ಗಣಕೀಕರಿಸಲಾಗಿದೆ

# ಕರ್ನಾಟಕ ವಿಧಾನ ಪರಿಷತ್ತು

144ನೇ ಅಧಿವೇಶನ 2021

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 126(189) |
| ಮಾನ್ಯ ಸದಸ್ಯರ ಹೆಸರು: | ಡಾ: ತೇಜಸ್ವಿನಿ ಗೌಡ(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು: | ಮಾನ್ಯ ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ: | 13-09-2021 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಸ್ಥಾಪನೆಯಾಗಿರುವ ಎಲ್ಲಾ ಖಾಸಗಿ ವಿಶ್ವವಿದ್ಯಾಲಯಗಳ ಬಗ್ಗೆ ಸದನದಲ್ಲಿ ಪಾಸ್ ಆಗಿರುವ ಕಾಯಿದೆಗಳ ಕನ್ನಡ ಪ್ರತಿಗಳನ್ನು ಒದಗಿಸುವುದು: | ರಾಜ್ಯದಲ್ಲಿ ಖಾಸಗಿ ವಿಶ್ವವಿದ್ಯಾಲಯಗಳನ್ನು ಸ್ಥಾಪನೆ ಮಾಡುವ ಬಗ್ಗೆ ಸದನದಲ್ಲಿ ಪಾಸ್ ಆಗಿರುವ ಒಟ್ಟು 33 ಅಧಿನಿಯಮಗಳ ಕನ್ನಡ ಪ್ರತಿಗಳನ್ನು **ಅನುಬಂಧ-01** ರಲ್ಲಿ ಒದಗಿಸಲಾಗಿದೆ. |
| ಆ) | ರಾಜ್ಯದಲ್ಲಿ ಖಾಸಗಿ ವಿಶ್ವವಿದ್ಯಾಲಯಗಳ ಸ್ಥಾಪನೆಗೆ ಇರುವ ಕಾಯಿದೆಗಳು ನಿಯಮಗಳು ಹಾಗೂ ಮಾನದಂಡಗಳು ಯಾವುವು; (ಮಾಹಿತಿ ನೀಡುವುದು) | ಖಾಸಗಿ ವಿಶ್ವವಿದ್ಯಾಲಯಗಳ ಸ್ಥಾಪನೆ ಮತ್ತು ನಿರ್ವಹಣೆಗೆ ಸಂಬಂಧಿಸಿದಂತೆ ಮಾನದಂಡಗಳನ್ನು ನಿಗದಿಪಡಿಸಿ ಯುಜಿಸಿಯಿಂದ ಹೊರಡಿಸಲಾಗಿರುವ UGC(ESTABLISHMENT OF AND MAINTENANCE OF STANDARDS IN PRIVATE UNIVERSITIES) REGULATIONS, 2003ರ ವಿನಿಯಮಗಳನ್ವಯ (ಅನುಬಂಧ-02) ಹಾಗೂ ಸರ್ಕಾರಿ ಆದೇಶ ಸಂಖ್ಯೆ: ಇಡಿ 449 ಯುಆರ್‌ಸಿ 2016, ದಿನಾಂಕ: 24-01-2017ರಲ್ಲಿನ ಮಾರ್ಗಸೂಚಿಗಳನ್ವಯ ರಾಜ್ಯದಲ್ಲಿ ಖಾಸಗಿ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಲಾಗುತ್ತಿದೆ (ಅನುಬಂಧ-03). |
| ಇ) | ರಾಜ್ಯದಲ್ಲಿರುವ ಎಲ್ಲಾ ಖಾಸಗಿ ವಿಶ್ವವಿದ್ಯಾಲಯಗಳು ಸರ್ಕಾರಕ್ಕೆ ನೀಡಿರುವ ದಾಖಲೆಗಳು ಯಾವುವು? (ಭೂಮಿ, ಡಿಪಾಜಿಟ್, ಆಡಿಟ್, ರಿಪೋರ್ಟ್, ಸ್ಪಾನ್ಸರಿಂಗ್ ಕಮಿಟಿ ವಿವರಗಳನ್ನು ನೀಡುವುದು) | ಸರ್ಕಾರಿ ಆದೇಶ ಸಂಖ್ಯೆ: ಇಡಿ 449 ಯುಆರ್‌ಸಿ 2016, ದಿನಾಂಕ: 24-01-2017ರಲ್ಲಿನ ಮಾರ್ಗಸೂಚಿಗಳಲ್ಲಿ ನಿಗದಿಪಡಿಸಿರುವ ದಾಖಲೆಗಳನ್ನು ಸರ್ಕಾರಕ್ಕೆ ಸಲ್ಲಿಸಲಾಗುತ್ತಿದೆ. |

ಸಂಖ್ಯೆ: ಇಡಿ/195/ಯುಆರ್‌ಸಿ/2021

(ಡಾ|| ಅಶ್ವಥ್‌ನಾರಾಯಣ ಸಿ.ಎನ್)

ಉನ್ನತ ಶಿಕ್ಷಣ, ಐಟಿ ಮತ್ತು ಬಿಟಿ, ವಿಜ್ಞಾನ ಮತ್ತು

ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು

ಜೀವನೋಪಾಯ ಇಲಾಖೆಗಳ ಸಚಿವರು

ಅನುಬಂಧ-01

| ಕ್ರ.ಸಂ | ಖಾಸಗಿ ವಿಶ್ವವಿದ್ಯಾಲಯಗಳ ಅಧಿನಿಯಮಗಳ ವಿವರ |
|---|---|
| 1 | ಆದಿಚುಂಚನಗಿರಿ ವಿಶ್ವವಿದ್ಯಾಲಯ ಅಧಿನಿಯಮ, 2012. |
| 2 | ಅಲಿಯನ್ಸ್ ವಿಶ್ವವಿದ್ಯಾಲಯ ಅಧಿನಿಯಮ, 2010. |
| 3 | ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ವಿಶ್ವವಿದ್ಯಾಲಯ ಅಧಿನಿಯಮ, 2018. |
| 4 | ವೈದೇಹಿ ವಿಶ್ವವಿದ್ಯಾಲಯ ಅಧಿನಿಯಮ, 2013. |
| 5 | ಶ್ರೀ ದೇವರಾಜ್ ಅರಸ್ ವಿಶ್ವವಿದ್ಯಾಲಯ ಅಧಿನಿಯಮ, 2012. |
| 6 | ಶರಣಬಸವ ವಿಶ್ವವಿದ್ಯಾಲಯ ಅಧಿನಿಯಮ, 2012. |
| 7 | ಎಂ.ಎಸ್.ಎಸ್. ರಾಮಯ್ಯ ಅನ್ವಯಿಕ ವಿಜ್ಞಾನಗಳ ವಿಶ್ವವಿದ್ಯಾಲಯ ಅಧಿನಿಯಮ, 2012. |
| 8 | ನ್ಯೂ ಬಾಲ್ಡ್‌ವಿನ್ ವಿಶ್ವವಿದ್ಯಾಲಯ ಅಧಿನಿಯಮ, 2013. |
| 9 | ರೇವಾ ವಿಶ್ವವಿದ್ಯಾಲಯ ಅಧಿನಿಯಮ, 2012. |
| 10 | ಶ್ರೀನಿವಾಸ ವಿಶ್ವವಿದ್ಯಾಲಯ ಅಧಿನಿಯಮ, 2013. |
| 11 | ಕೆ.ಎಲ್.ಇ. ತಾಂತ್ರಿಕ ವಿಶ್ವವಿದ್ಯಾಲಯ ಅಧಿನಿಯಮ, 2012. |
| 12 | ಶ್ರೀ ಸತ್ಯಸಾಯಿ ಮಾನವ ಅಭ್ಯುದಯ ವಿಶ್ವವಿದ್ಯಾಲಯ ಅಧಿನಿಯಮ, 2018. |
| 13 | ವೆಲ್ಲೂರು ತಾಂತ್ರಿಕ ಸಂಸ್ಥೆ, ಬೆಂಗಳೂರು ಅಧಿನಿಯಮ, 2012. |
| 14 | ರೈ ತಾಂತ್ರಿಕ ವಿಶ್ವವಿದ್ಯಾಲಯ ಅಧಿನಿಯಮ, 2012. |
| 15 | ಖಾಜಾ ಬಂದಾನವಾಜ್ ವಿಶ್ವವಿದ್ಯಾಲಯ ಅಧಿನಿಯಮ, 2018. |
| 16 | ಪ್ರೆಸಿಡೆನ್ಸಿ ವಿಶ್ವವಿದ್ಯಾಲಯ ಅಧಿನಿಯಮ, 2013. |
| 17 | ಅಮಿಟಿ ವಿಶ್ವವಿದ್ಯಾಲಯ ಅಧಿನಿಯಮ, 2018. |
| 18 | ಅರ್ಕ ವಿಶ್ವವಿದ್ಯಾಲಯ ಅಧಿನಿಯಮ, 2012. |
| 19 | ಅಜೀಂ ಪ್ರೇಮ್‌ಜಿ ವಿಶ್ವವಿದ್ಯಾಲಯ ಅಧಿನಿಯಮ, 2010. |
| 20 | ಸಿ.ಎಂ.ಆರ್. ವಿಶ್ವವಿದ್ಯಾಲಯ ಅಧಿನಿಯಮ, 2013. |
| 21 | ಪಿ.ಇ.ಎಸ್. ವಿಶ್ವವಿದ್ಯಾಲಯ ಅಧಿನಿಯಮ, 2012. |
| 22 | ದಯಾನಂದ ಸಾಗರ ವಿಶ್ವವಿದ್ಯಾಲಯ ಅಧಿನಿಯಮ, 2012. |
| 23 | ಗಾರ್ಡನ್ ಸಿಟಿ ವಿಶ್ವವಿದ್ಯಾಲಯ ಅಧಿನಿಯಮ, 2013. |
| 24 | ಜಗತ್ ವಿಶ್ವವಿದ್ಯಾಲಯ ಅಧಿನಿಯಮ, 2018. |
| 25 | ಅಮೃತ ಸಿಂಚನ ಆಧ್ಯಾತ್ಮಿಕ ವಿಶ್ವವಿದ್ಯಾಲಯ ಅಧಿನಿಯಮ, 2012. |
| 26 | ಮಣಿಪಾಲ್ ವಿಶ್ವವಿದ್ಯಾಲಯ ಅಧಿನಿಯಮ, 2012. |
| 27 | ಜೆ.ಎಸ್.ಎಸ್. ವಿಜ್ಞಾನ ಮತ್ತು ತಂತ್ರಜ್ಞಾನ ವಿಶ್ವವಿದ್ಯಾಲಯ ಅಧಿನಿಯಮ, 2013. |
| 28 | ಎನ್.ಐ.ಇ. ವಿಶ್ವವಿದ್ಯಾಲಯ ಅಧಿನಿಯಮ, 2019. |
| 29 | ಆರ್.ವಿ. ವಿಶ್ವವಿದ್ಯಾಲಯ ಅಧಿನಿಯಮ, 2019. |
| 30 | ವಿದ್ಯಾಶಿಲ್ಪ್ ವಿಶ್ವವಿದ್ಯಾಲಯ ಅಧಿನಿಯಮ, 2020. |
| 31 | ಏಟ್ರಿಯಾ ವಿಶ್ವವಿದ್ಯಾಲಯ ಅಧಿನಿಯಮ, 2020. |
| 32 | ಶ್ರೀ ಜಗದ್ಗುರು ಮುರುಘರಾಜೇಂದ್ರ ವಿಶ್ವವಿದ್ಯಾಲಯ ಅಧಿನಿಯಮ, 2020. |
| 33 | ನ್ಯೂ ಹೊರೈಜಾನ್ ವಿಶ್ವವಿದ್ಯಾಲಯ ಅಧಿನಿಯಮ, 2021. |

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ - IV-A<br>Part - IV-A | ಬೆಂಗಳೂರು, ಶುಕ್ರವಾರ, ಫೆಬ್ರವರಿ ೮, ೨೦೧೩ (ಮಾಘ ೧೯, ಶಕ ವರ್ಷ ೧೯೩೪)<br>Bangalore, Friday, February 8, 2013 (Magha 19, Shaka Varsha 1934) | ನಂ.೧೬೬<br>No. 166 |
|---|---|---|

## ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ

### ಅಧಿಸೂಚನೆ

**ಸಂಖ್ಯೆ: ಸಂವ್ಯಶಾಇ 79 ಶಾಸನ 2012, ಬೆಂಗಳೂರು, ದಿನಾಂಕ: 08.02.2013**

ಆದಿಚುಂಚನಗಿರಿ ವಿಶ್ವವಿದ್ಯಾಲಯ ವಿಧೇಯಕ, 2012 – ಇದಕ್ಕೆ 2013ರ ಫೆಬ್ರವರಿ ತಿಂಗಳ ಐದನೇ ದಿನಾಂಕದಂದು ಘನತೆವೆತ್ತ ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2013ರ ಕರ್ನಾಟಕ ಅಧಿನಿಯಮ ಸಂಖ್ಯೆ: 18 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2013 ರ ಕರ್ನಾಟಕ ಅಧಿನಿಯಮ ಸಂಖ್ಯೆ: 18**

(2013ರ ಜನವರಿ ಮಾಹೆಯ ಎಂಟನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಆದಿಚುಂಚನಗಿರಿ ವಿಶ್ವವಿದ್ಯಾಲಯ ಅಧಿನಿಯಮ, 2012**

(2013ರ ಜನವರಿ ಮಾಹೆಯ ಐದನೇ ದಿನಾಂಕದಂದು ರಾಜ್ಯಪಾಲರ ಅನುಮತಿಯನ್ನು ಪಡೆಯಲಾಗಿದೆ)

ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ, ಆರೋಗ್ಯ ವಿಜ್ಞಾನಗಳು, ಕೃಷಿ ವಿಜ್ಞಾನಗಳು ಮತ್ತು ತಂತ್ರಜ್ಞಾನ, ವ್ಯವಸ್ಥಾಪನೆ ಮತ್ತು ತಂತ್ರಜ್ಞಾನ, ನೈಸರ್ಗಿಕ ವಿಜ್ಞಾನಗಳು, ಮಾನವಿಕಗಳು ಮತ್ತು ಸಮಾಜ ವಿಜ್ಞಾನಗಳು ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಪ್ರೋತ್ಸಾಹಿಸಲು ಮತ್ತು ಕೈಗೊಳ್ಳಲು ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದಕ್ಕಾಗಿ ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ, ಆರೋಗ್ಯ ವಿಜ್ಞಾನಗಳು, ಕೃಷಿ ವಿಜ್ಞಾನಗಳು ಮತ್ತು ತಂತ್ರಜ್ಞಾನ, ವ್ಯವಸ್ಥಾಪನೆ ಮತ್ತು ತಂತ್ರಜ್ಞಾನ, ನೈಸರ್ಗಿಕ ವಿಜ್ಞಾನಗಳು, ಮಾನವಿಕಗಳು ಮತ್ತು ಸಮಾಜ ವಿಜ್ಞಾನಗಳು ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಪ್ರೋತ್ಸಾಹಿಸಲು ಮತ್ತು ಕೈಗೊಳ್ಳಲು ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೂರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

## ಅಧ್ಯಾಯ – I

## ಪ್ರಾರಂಭಿಕ

**1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.**– (1) ಈ ಅಧಿನಿಯಮವನ್ನು ಆದಿಚುಂಚನಗಿರಿ ವಿಶ್ವವಿದ್ಯಾಲಯ ಅಧಿನಿಯಮ, 2012 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. ಪರಿಭಾಷೆಗಳು.**– ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) "ಶೈಕ್ಷಣಿಕ ಪರಿಷತ್ತು (ಅಕೆಡೆಮಿಕ್ ಕೌನ್ಸಿಲ್)" ಎಂದರೆ, 25ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿಸಲಾದ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು;

(ಬಿ) "ಕಾರ್ಯಸೂಚಿ ವಿಷಯಗಳು", ಎಂದರೆ, ಪರಿನಿಯಮಗಳಲ್ಲಿ ಹೆಸರಿಸಬಹುದಾದ ಮತ್ತು ಒಂದು ಸಭೆಯಲ್ಲಿ ಆ ವಿಷಯಗಳನ್ನು ಮತ್ತು ಕಲಾಪಗಳನ್ನು ಅನುಮೋದಿಸಬಹುದೆಂದು ತಮ್ಮ ಸಮ್ಮತಿ ಸೂಚಿಸಿ ಕುಲಾಧಿಪತಿಯವರು ಮುಂಚಿತವಾಗಿಯೇ ಲಿಖಿತ ಅನುಮೋದನೆಯನ್ನು ಕೊಟ್ಟಿದ್ದಾಗ ಮಾತ್ರವೇ ಸಂದರ್ಭಾನುಸಾರ ಪ್ರಬಂಧಕ ಮಂಡಳಿ ಅಥವಾ ವ್ಯವಸ್ಥಾಪನಾ ಮಂಡಳಿ ಅಥವಾ ಯಾವುದೇ ಸಮಿತಿಯವರು ಕಾರ್ಯಸೂಚಿಯಲ್ಲಿ ಸೇರಿಸಬಹುದಾದ ಅಥವಾ ಸಭೆಯಲ್ಲಿ ಚರ್ಚೆಗೆ ತೆಗೆದುಕೊಂಡು ನಿರ್ಣಯವನ್ನು ಕೊಡಬಹುದಾದ ಎಲ್ಲಾ ವಿಷಯಗಳು ಮತ್ತು ಕಲಾಪಗಳು;

(ಸಿ) "ಪ್ರಬಂಧಕ ಮಂಡಳಿ" ಎಂದರೆ, 23ನೇ ಪ್ರಕರಣದ ಅಡಿಯಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ;

(ಡಿ) "ವ್ಯವಸ್ಥಾಪನಾ ಮಂಡಳಿ" ಎಂದರೆ, 24ನೇ ಪ್ರಕರಣದ ಅಡಿಯಲ್ಲಿ ರಚಿಸಲಾದ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿ;

(ಇ) "ಕುಲಾಧಿಪತಿ", "ಕುಲಪತಿ", "ಸಹಕುಲಪತಿ" ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ ಮತ್ತು ಸಹಕುಲಪತಿ;

(ಎಫ್) "ಕ್ಯಾಂಪಸ್" ಎಂದರೆ, ಅದು ಎಲ್ಲಾದರೂ ಇರಲಿ ವಿಶ್ವವಿದ್ಯಾಲಯವು ಸ್ಥಾಪಿಸಿದ, ನಿರ್ವಹಿಸುವ ಒಂದು ಕ್ಯಾಂಪಸ್;

(ಜಿ) "ಸಮಿತಿಗಳು" ಎಂದರೆ, ಈ ಅಧಿನಿಯಮದಡಿಯಲ್ಲಿ ರೂಪಿಸಲಾದ ಸಮಿತಿಗಳು ಅಥವಾ ಸಂದರ್ಭಾನುಸಾರವಾಗಿ ವಿಶ್ವವಿದ್ಯಾಲಯದ ವಿವಿಧ ಕಾರ್ಯಕರ್ತರು ರಚಿಸಿರುವ ಸಮಿತಿಗಳು ಮತ್ತು ಅದರಲ್ಲಿ ನಾಮನಿರ್ದೇಶನ ಸಮಿತಿ, ಹಣಕಾಸು ಸಮಿತಿ ಮತ್ತು ಅಂಥ ಇತರ ಸಮಿತಿಗಳು ಒಳಗೊಳ್ಳುತ್ತವೆ;

(ಎಚ್) "ಘಟಕ ಕಾಲೇಜು" ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುತ್ತಿರುವ ಒಂದು ಕಾಲೇಜು ಅಥವಾ ಸಂಸ್ಥೆ;

(ಐ) "ಹಣಕಾಸು ಸಮಿತಿ" ಎಂದರೆ, 27ನೇ ಪ್ರಕರಣದ ಅಡಿಯಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಹಣಕಾಸು ಸಮಿತಿ;

(ಜೆ) "ಸರ್ಕಾರ" ಎಂದರೆ, ಕರ್ನಾಟಕ ಸರ್ಕಾರ;

(ಕೆ) "ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳು" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ, ಅಖಿಲ ಭಾರತ ತಾಂತ್ರಿಕ ವಿದ್ಯಾಪರಿಷತ್ತು, ಭಾರತೀಯ ವೈದ್ಯಕೀಯ ಪರಿಷತ್ತು, ಭಾರತೀಯ ಔಷಧ ವಿಜ್ಞಾನ ಪರಿಷತ್ತು, ಭಾರತೀಯ ಕೃಷಿ ಸಂಶೋಧನಾ ಪರಿಷತ್ತು, ರಾಷ್ಟ್ರೀಯ ಮೌಲ್ಯಮಾಪನ ಮತ್ತು ಅಧಿಮಾನ್ಯತಾ ಪರಿಷತ್ತು, ರಾಷ್ಟ್ರೀಯ ಬೋಧಕ ಶಿಕ್ಷಣ ಪರಿಷತ್ತು, ದೂರಶಿಕ್ಷಣ ಪರಿಷತ್ತು, ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಪರಿಷತ್ತುಗಳಂಥವುಗಳು, ಉನ್ನತ ಶಿಕ್ಷಣದಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುವಂತೆ ನೋಡಿಕೊಳ್ಳುವುದಕ್ಕಾಗಿ ಹಾಗೂ ಗುಣಮಟ್ಟಗಳು ಮತ್ತು ಷರತ್ತುಗಳನ್ನು ವಿಧಿಸುವುದಕ್ಕಾಗಿ, ಕೇಂದ್ರ ಸರ್ಕಾರವು ಸ್ಥಾಪಿಸಿರುವ ಒಂದು ಸಂಸ್ಥೆ ಮತ್ತು ಇದರಲ್ಲಿ ಸರ್ಕಾರವೂ ಸೇರಿರುತ್ತದೆ;

(ಎಲ್) "ನಿಯಮಿಸಲಾದುದು" ಎಂದರೆ, ಈ ಅಧಿನಿಯಮದಡಿಯಲ್ಲಿ ಸರ್ಕಾರವು ರಚಿಸಲಾದ ನಿಯಮಗಳ ಮೂಲಕ ನಿಯಮಿಸಲಾದುದು;

(ಎಂ) "ಒಂದು ಘಟಕ ಕಾಲೇಜಿಗೆ ಸಂಬಂಧಪಟ್ಟಂತೆ ಪ್ರಾಂಶುಪಾಲರು" ಎಂದರೆ, ಘಟಕ ಕಾಲೇಜಿನ ಮುಖ್ಯಸ್ಥರು ಮತ್ತು ಪ್ರಾಂಶುಪಾಲರು ಇಲ್ಲದಿದ್ದಲ್ಲಿ ಅಥವಾ ನೇಮಕವಾದ ಪ್ರಾಂಶುಪಾಲರ ಗೈರುಹಾಜರಿಯಲ್ಲಿ, ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ತಾತ್ಕಾಲಿಕವಾಗಿ ನೇಮಕಗೊಂಡಿರುವ ಉಪಪ್ರಾಂಶುಪಾಲರು ಅಥವಾ ಯಾವೊಬ್ಬ ಇತರ ವ್ಯಕ್ತಿಯೂ ಇದರಲ್ಲಿ ಒಳಗೊಳ್ಳುತ್ತಾರೆ;

(ಎನ್) "ಕುಲಸಚಿವರು" ಎಂದರೆ, ವಿಶ್ವವಿದ್ಯಾಲಯದ ಕುಲಸಚಿವರು;

(ಒ) "ಪ್ರಾದೇಶಿಕ ಕೇಂದ್ರ" ಎಂದರೆ, ಯಾವುದೇ ಪ್ರದೇಶದಲ್ಲಿನ ಅಧ್ಯಯನ ಕೇಂದ್ರಗಳ ಕಾರ್ಯವನ್ನು ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ಮಾಡುವ ಉದ್ದೇಶಕ್ಕಾಗಿ ಮತ್ತು ಅಂಥ ಕೇಂದ್ರಕ್ಕೆ ವ್ಯವಸ್ಥಾಪನಾ ಮಂಡಳಿಯು ವಹಿಸಿಕೊಡಬಹುದಾದ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸುವುದಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಅಥವಾ ನಿರ್ವಹಿಸಿಕೊಂಡುಬರುವ ಒಂದು ಕೇಂದ್ರ;

(ಪಿ) "ನ್ಯಾಸ" ಎಂದರೆ ಒಂದು ನೋಂದಾಯಿತ ನ್ಯಾಸ ಮತ್ತು ಪ್ರಾಯೋಜಿತ ಸಂಸ್ಥೆಯಾಗಿರುವ ಆದಿಚುಂಚನಗಿರಿ ಶಿಕ್ಷಣ ನ್ಯಾಸ;

(ಕ್ಯೂ) ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ "ಪ್ರಾಯೋಜಕ ಪ್ರಾಧಿಕಾರ" ಅಥವಾ "ಪ್ರಾಯೋಜಕ ಸಂಸ್ಥೆ" ಎಂದರೆ, ನ್ಯಾಸ;

(ಆರ್) "ರಾಜ್ಯ" ಎಂದರೆ, ಕರ್ನಾಟಕ ರಾಜ್ಯ;

(ಎಸ್) "ಪರಿನಿಯಮಗಳು" ಮತ್ತು "ವಿನಿಯಮಗಳು" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಅನುಕ್ರಮವಾಗಿ ವಿಶ್ವವಿದ್ಯಾಲಯದ ಪರಿನಿಯಮಗಳು ಮತ್ತು ವಿನಿಯಮಗಳು;

(ಟಿ) "ಅಧ್ಯಯನ ಕೇಂದ್ರ" ಎಂದರೆ, ಶಿಕ್ಷಣದ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಅಗತ್ಯವಾದ ಬುದ್ಧಿವಾದ, ಸಲಹೆಗಳನ್ನು ನೀಡುವ ಅಥವಾ ಇತರ ಯಾವುದೇ ನೆರವನ್ನು ನೀಡುವ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಮತ್ತು ನಿರ್ವಹಿಸಿಕೊಂಡುಬಂದ ಒಂದು ಕೇಂದ್ರ;

(ಯು) "ಅಧ್ಯಾಪಕರು" ಎಂದರೆ, ಒಬ್ಬ ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಒಂದು ಘಟಕ ಕಾಲೇಜಿನಲ್ಲಿ ಬೋಧಿಸುವುದಕ್ಕೆ ಅಥವಾ ಸಂಶೋಧನೆ ನಡೆಸುವುದಕ್ಕೆ ಅಥವಾ ಸಂಶೋಧನೆಗೆ ಮಾರ್ಗದರ್ಶನ ನೀಡುವುದಕ್ಕೆ ನೇಮಕವಾದ ಅಂಥ ಇತರ ವ್ಯಕ್ತಿ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗವು ನಿಯಮಿಸಿದ ಗುಣಮಟ್ಟಗಳಿಗೆ ಅನುಸಾರವಾಗಿ ಇರುವ ಘಟಕ ಕಾಲೇಜಿನ ಪ್ರಾಂಶುಪಾಲರು ಇದರಲ್ಲಿ ಒಳಗೊಳ್ಳುತ್ತಾರೆ;

(ವಿ) "ವಿಶ್ವವಿದ್ಯಾಲಯ ಅನುದಾನಗಳ ಆಯೋಗ" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) 4ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ಆಯೋಗ;

(ಡಬ್ಲ್ಯೂ) "ವಿಶ್ವವಿದ್ಯಾಲಯ" ಎಂದರೆ, ಈ ಅಧಿನಿಯಮದಡಿಯಲ್ಲಿ ಸ್ಥಾಪಿಸಿ ನಿಗಮಿತಗೊಳಿಸಲಾದ ಆದಿಚುಂಚನಗಿರಿ ವಿಶ್ವವಿದ್ಯಾಲಯ;

(ಎಕ್ಸ್) "ಸಂದರ್ಶಕರು" ಎಂದರೆ, 13ನೇ ಪ್ರಕರಣದ ಅಡಿಯಲ್ಲಿ ನಿರ್ದಿಷ್ಟಪಡಿಸಿದ ವಿಶ್ವವಿದ್ಯಾಲಯದ ಸಂದರ್ಶಕರು.

## ಅಧ್ಯಾಯ– II

## ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

**3. ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ.–** (1) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಹಕ್ಕನ್ನು ನ್ಯಾಸವು ಹೊಂದಿರತಕ್ಕದ್ದು.

(2) ನ್ಯಾಸವು ರಾಜ್ಯ ಸರ್ಕಾರಕ್ಕೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವವನ್ನು ಸಲ್ಲಿಸತಕ್ಕದ್ದು.

(3) ಪ್ರಸ್ತಾವವು ಈ ಮುಂದಿನ ವಿವರಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ನ್ಯಾಸದ ವಿವರಗಳೊಂದಿಗೆ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು;

(ii) ವಿಶ್ವವಿದ್ಯಾಲಯದ ವ್ಯಾಪ್ತಿ ಮತ್ತು ಸ್ಥಾನಮಾನ ಹಾಗೂ ಭೂಮಿಯ ಲಭ್ಯತೆ;

(iii) ಪ್ರಾರಂಭದ ದಿನಾಂಕದಿಂದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳಬೇಕೆಂದಿರುವ ಅಧ್ಯಯನ ಮತ್ತು ಸಂಶೋಧನಾ ಕಾರ್ಯಕ್ರಮಗಳ ಸ್ವರೂಪ ಮತ್ತು ಬಗೆಗಳು;

(iv) ಪ್ರಾರಂಭಿಸಬೇಕೆಂದು ಪ್ರಸ್ತಾಪಿಸಿರುವ ವ್ಯಾಸಂಗ ವಿಭಾಗಗಳು (ಫ್ಯಾಕಲ್ಟಿಗಳು), ಅಧ್ಯಯನ ಕ್ರಮಗಳು ಮತ್ತು ಸಂಶೋಧನೆಗಳ ಸ್ವರೂಪ;

(v) ಕಟ್ಟಡಗಳು, ಸಲಕರಣೆಗಳು ಮತ್ತು ರಚನಾ ಸೌಕರ್ಯಗಳನ್ನು ಒದಗಿಸುವಂಥ ಕ್ಯಾಂಪಸ್ ಅಭಿವೃದ್ಧಿ;

(vi) ಪ್ರಾರಂಭದ ದಿನಾಂಕದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಗಾಗಿ ಬಂಡವಾಳ ವೆಚ್ಚದ ಹಂತಗಳು;

(vii) ಬಾಬುವಾರು ಆವರ್ತಕ ವೆಚ್ಚ, ಆರ್ಥಿಕ ಮೂಲಗಳು ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ತಗಲುವ ಅಂದಾಜು ವೆಚ್ಚ;

(viii) ಸಂಪನ್ಮೂಲ ಸಂಗ್ರಹಣೆಗಾಗಿ ಯೋಜನೆ ಮತ್ತು ಅದಕ್ಕೆ ಬಂಡವಾಳದಿಂದ ತಗಲುವ ವೆಚ್ಚ ಹಾಗೂ ಪ್ರತಿಯೊಂದು ಮೂಲಕ್ಕೂ ಮರು ಸಂದಾಯ ಮಾಡುವ ರೀತಿ;

(ix) ವಿದ್ಯಾರ್ಥಿಗಳಿಂದ ಶುಲ್ಕ ವಸೂಲು ಮಾಡಿ ಆಂತರಿಕವಾಗಿ ನಿಧಿ ಸಂಗ್ರಹಿಸುವ ಯೋಜನೆ, ಸಲಹಾ ಸೇವೆ ಮತ್ತು ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಿಗೆ ಸಂಬಂಧಿಸಿದ ಇತರ ಚಟುವಟಿಕೆಗಳಿಂದ ನಿರೀಕ್ಷಿತ ವರಮಾನಗಳು ಮತ್ತು ಇತರ ನಿರೀಕ್ಷಿತ ವರಮಾನಗಳು;

(x) ಘಟಕವೊಂದಕ್ಕೆ ತಗಲುವ ವೆಚ್ಚದ ವಿವರಗಳು, ಆರ್ಥಿಕವಾಗಿ ದುರ್ಬಲವಾದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕ, ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿ ವೇತನದಲ್ಲಿ ನೀಡುವ ರಿಯಾಯಿತಿ ಅಥವಾ ವಿನಾಯತಿಯ ಪರಿಮಿತಿಯ ವಿವರಗಳನ್ನು ಮತ್ತು ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳಿಗೆ ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳು ಪ್ರಾಯೋಜಿಸಿದ ವಿದ್ಯಾರ್ಥಿಗಳಿಗೆ ಮತ್ತು ಭಾರತವನ್ನುಳಿದು ಇತರ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ವಿಧಿಸತಕ್ಕ ಶುಲ್ಕದ ದರಗಳು ಬೇರೆ ಬೇರೆ ಇದ್ದಲ್ಲಿ ಅವುಗಳನ್ನು ಸೂಚಿಸುವ ಶುಲ್ಕ ರಚನೆಯ ವಿವರಗಳು;

(xi) ಸಂಬಂಧಪಟ್ಟ ವಿದ್ಯಾ ವಿಭಾಗದಲ್ಲಿ ಎಷ್ಟು ವರ್ಷಗಳ ಅನುಭವ ಮತ್ತು ಪರಿಣಿತಿಯನ್ನು ನ್ಯಾಸವು ದೊರಕಿಸಿಕೊಡಲಿದೆ ಹಾಗೂ ಅದರ ಹಣಕಾಸಿನ ಸಂಪನ್ಮೂಲಗಳು;

(xii) ವಿಶ್ವವಿದ್ಯಾಲಯದಲ್ಲಿರುವ ಅಧ್ಯಯನ ಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕಾಗಿ ಇರುವ ವ್ಯವಸ್ಥೆ;

(xiii) ವಿಶ್ವವಿದ್ಯಾಲಯವು ಸ್ಥಾಪನೆಯಾಗುವುದಕ್ಕೆ ಮೊದಲು ನೆರವೇರಿಸಬೇಕೆಂದು ರಾಜ್ಯ ಸರ್ಕಾರವು ಅಗತ್ಯಪಡಿಸಬಹುದಾದ ಅಂಥ ಇತರ ಷರತ್ತುಗಳ ನೆರವೇರಿಕೆಯ ಹಂತ.

(4) ಸ್ವೀಕರಿಸಿದ ಪ್ರಸ್ತಾವಗಳನ್ನು ಪರೀಕ್ಷಿಸಲು ರಾಜ್ಯ ಸರ್ಕಾರವು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಪದನಿಮಿತ್ತ ಸದಸ್ಯರಾದ ಮೂರು ಸದಸ್ಯರುಗಳನ್ನು ಒಳಗೊಂಡ ಒಂದು ಪರಿಶೋಧನಾ ಸಮಿತಿಯನ್ನು ರಚಿಸತಕ್ಕದ್ದು ಮತ್ತು ಅದು ರಾಜ್ಯ ಸರ್ಕಾರಕ್ಕೆ ಶಿಫಾರಸ್ಸನ್ನು ಮಾಡತಕ್ಕದ್ದು.

**4. ವಿಶ್ವವಿದ್ಯಾಲಯದ ಸ್ಥಾಪನೆ.**– (1) ರಾಜ್ಯ ಸರ್ಕಾರವು ಪರಿಶೋಧನಾ ಸಮಿತಿಯು ಮಾಡಿದ ಶಿಫಾರಸ್ಸುಗಳನ್ನು ಪರಿಶೀಲಿಸಿದ ತರುವಾಯ ಮತ್ತು ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ,–

(i) ನ್ಯಾಸವು ಸಾಕಷ್ಟು ಮೂಲ ಸೌಕರ್ಯದೊಂದಿಗೆ ವಿಶ್ವವಿದ್ಯಾಲಯವೊಂದನ್ನು ನಡೆಸಲು ಸಮರ್ಥವಾಗಿದೆ ಎಂದು ಅದು ಮನಗಂಡರೆ;

(ii) ಪ್ರದೇಶಕ್ಕನುಸಾರವಾಗಿ ಕೆಳಗೆ ನಿರ್ದಿಷ್ಟ ಪಡಿಸಿದ ವ್ಯಾಪ್ತಿಗೆ ಭೂಮಿಯ ಒಡೆಯತನವನ್ನು ಹೊಂದಿರತಕ್ಕದ್ದು, ಎಂದರೆ:–

(ಎ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯೊಳಗಿದ್ದರೆ ಇಪ್ಪತ್ತೈದು ಎಕರೆಗಳು;

(ಬಿ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯಿಂದ ಹೊರಗೆ ಇದ್ದು ಆದರೆ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಪ್ರದೇಶದ ಒಳಗೆ ಇದ್ದರೆ ನಲವತ್ತು ಎಕರೆಗಳು;

(ಸಿ) ಭೂಮಿಯು (ಎ) ಮತ್ತು (ಬಿ) ಖಂಡಗಳಲ್ಲಿ ನಿರ್ದಿಷ್ಟಪಡಿಸಿದ ಸ್ಥಳಗಳನ್ನು ಹೊರತುಪಡಿಸಿದ್ದರೆ ಅರವತ್ತು ಎಕರೆಗಳಿಗಿಂತ ಕಡಿಮೆ ಇರತಕ್ಕದ್ದಲ್ಲ.

ಮೇಲೆ ನಿರ್ದಿಷ್ಟಪಡಿಸಿದ ಭೂಮಿಯು ಏಕ ಘಟಕ (ಸಿಂಗಲ್ ಬ್ಲಾಕ್) ದಲ್ಲಿರತಕ್ಕದ್ದು ಮತ್ತು ಇದು ಸಂಬಂಧಪಟ್ಟ ನ್ಯಾಸ / ಪ್ರತಿಷ್ಠಾನ / ಸಂಸ್ಥೆ / ವಿಶ್ವವಿದ್ಯಾಲಯದ ಹೆಸರಿನಲ್ಲಿರತಕ್ಕದ್ದು. 3ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ಅಗತ್ಯಪಡಿಸಲಾದಂತೆ ಒದಗಿಸಿದ ವಿವರಗಳ ಆಧಾರದ ಮೇಲೆ ಸರ್ಕಾರವು 47ನೇ ಪ್ರಕರಣದ ಅಡಿಯಲ್ಲಿ ನಿರ್ದಿಷ್ಟಪಡಿಸಿರುವ ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಬೇಕೆಂದು ನ್ಯಾಸಕ್ಕೆ ನಿರ್ದೇಶನ ನೀಡಬಹುದು.

(2) ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಸ್ಥಾಪನೆಯ ತರುವಾಯ, ರಾಜ್ಯ ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, "ಆದಿಚುಂಚನಗಿರಿ ವಿಶ್ವವಿದ್ಯಾಲಯ" ಎಂಬ ಹೆಸರಿನ ಏಕಾತ್ಮಕ ಸ್ವರೂಪದ ಒಂದು ವಿಶ್ವವಿದ್ಯಾಲಯವನ್ನು ರಾಜ್ಯದಲ್ಲಿ ಸ್ಥಾಪಿಸುವುದಕ್ಕೆ ಮಂಜೂರಾತಿಯನ್ನು ನೀಡಬಹುದು.

(3) ವಿಶ್ವವಿದ್ಯಾಲಯದ ಕೇಂದ್ರ ಕಾರ್ಯಸ್ಥಾನವು ಮಂಡ್ಯ ಜಿಲ್ಲೆಯಲ್ಲಿ ಇರತಕ್ಕದ್ದು. ವಿಶ್ವವಿದ್ಯಾಲಯವು ತನ್ನ ಕ್ಯಾಂಪಸ್ಸುಗಳನ್ನು ಅಥವಾ ಪ್ರಾದೇಶಿಕ ಕೇಂದ್ರಗಳನ್ನು, ಅಧ್ಯಯನ ಕೇಂದ್ರಗಳನ್ನು ಕರ್ನಾಟಕದ ಯಾವುದೇ ಭಾಗದಲ್ಲಿ ಹೊಂದಿರತಕ್ಕದ್ದು ಮತ್ತು ಆ ಬಗ್ಗೆ ರಾಜ್ಯ ಸರ್ಕಾರದ ಪೂರ್ವಾನುಮತಿಯನ್ನು ಪಡೆದುಕೊಳ್ಳುವುದಕ್ಕೊಳಪಟ್ಟು ಹಾಗೂ ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗನುಸಾರವಾಗಿ ಹೊಂದಿರತಕ್ಕದ್ದು.

(4) ಮೊದಲ ಕುಲಾಧಿಪತಿಯವರು, ಮೊದಲ ಕುಲಪತಿಯವರು, ಪ್ರಬಂಧಕ ಮಂಡಳಿಯ ಮೊದಲ ಸದಸ್ಯರುಗಳು, ವ್ಯವಸ್ಥಾಪನಾ ಮಂಡಳಿಯ ಹಾಗೂ ಶೈಕ್ಷಣಿಕ ಪರಿಷತ್ತಿನ ಮೊದಲ ಸದಸ್ಯರುಗಳು ಮತ್ತು ಇನ್ನು ಮುಂದೆ, ಅಂಥ ಅಧಿಕಾರಿಗಳು ಅಥವಾ ಸದಸ್ಯರುಗಳಾಗಬಹುದಾದಂಥ ಎಲ್ಲಾ ವ್ಯಕ್ತಿಗಳು, ಅಂಥ ಪದ ಅಥವಾ ಸದಸ್ಯತ್ವವನ್ನು ಹೊಂದಿರುವುದು ಮುಂದುವರೆಯುವವರೆಗೆ, ಒಂದು ನಿಗಮಿತ ನಿಕಾಯವನ್ನು ರಚಿಸತಕ್ಕದ್ದು ಮತ್ತು ಅದು ವಿಶ್ವವಿದ್ಯಾಲಯದ ಹೆಸರಿನಲ್ಲಿ ದಾವೆ ಹೂಡಬಹುದು ಮತ್ತು ದಾವೆಗೊಳಗಾಗಬಹುದು.

(5) (2)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಸ್ಥಾಪನೆಗೆ ಮಂಜೂರಾತಿಯಾದ ಮೇಲೆ, ವಿಶ್ವವಿದ್ಯಾಲಯದ ಉದ್ದೇಶಕ್ಕಾಗಿ, ನ್ಯಾಸವು ಆರ್ಜಿಸಿದ, ಸೃಜಿಸಿದ, ಏರ್ಪಾಟು ಮಾಡಿಕೊಂಡ ಅಥವಾ ಕಟ್ಟಲ್ಪಟ್ಟ ಭೂಮಿ ಮತ್ತು ಇತರ ಸ್ಥಿರ ಮತ್ತು ಚರ ಸ್ವತ್ತು, ವಿಶ್ವವಿದ್ಯಾಲಯದಲ್ಲಿ ನಿಹಿತವಾಗಿರತಕ್ಕದ್ದು.

(6) ವಿಶ್ವವಿದ್ಯಾಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದ ಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂಥ ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

(7) ವಿಶ್ವವಿದ್ಯಾಲಯದಲ್ಲಿನ ಭೂಮಿ, ಕಟ್ಟಡ ಮತ್ತು ಇತರ ಸ್ವತ್ತುಗಳನ್ನು ವಿಶ್ವವಿದ್ಯಾಲಯದ ಉದ್ದೇಶಗಳಿಗೆ ಆನುಷಂಗಿಕವಾಗಿರುವುದನ್ನು ಹೊರತುಪಡಿಸಿ ಇತರ ಯಾವುದೇ ಉದ್ದೇಶಕ್ಕಾಗಿ ಬಳಸತಕ್ಕದ್ದಲ್ಲ.

**5. ಅನುದಾನಗಳು ಮತ್ತು ಹಣಕಾಸು ನೆರವು.–** ವಿಶ್ವವಿದ್ಯಾಲಯವು ಸ್ವಂತ ಧನಮೂಲ ಉಳ್ಳದ್ದಾಗಿರತಕ್ಕದ್ದು ಮತ್ತು ರಾಜ್ಯದಿಂದ ಅಥವಾ ರಾಜ್ಯದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಇತರ ಸಂಸ್ಥೆ ಅಥವಾ ನಿಗಮದಿಂದ ಯಾವುದೇ ನಿರ್ವಹಣಾ ಸಹಾಯ ಅನುದಾನ ಅಥವಾ ಯಾವುದೇ ಹಣಕಾಸು ನೆರವನ್ನು ಹಕ್ಕಿನಿಂದ ಕೇಳತಕ್ಕದ್ದಲ್ಲ ಅಥವಾ ಅದನ್ನು ಪಡೆಯಲು ಹಕ್ಕನ್ನು ಹೊಂದಿರತಕ್ಕದ್ದಲ್ಲ:

ಪರಂತು, ರಾಜ್ಯವು,–

(ಎ) ಇತರ ರಾಜ್ಯ ಸರ್ಕಾರದ ಸಂಘಟನೆಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿರುವಂಥದ್ದೇ ಸಂಶೋಧನೆ, ಅಭಿವೃದ್ಧಿ ಮತ್ತಿತರ ಚಟುವಟಿಕೆಗಳಿಗಾಗಿ; ಅಥವಾ

(ಬಿ) ಸರ್ಕಾರದಿಂದ ನೆರವನ್ನು ಪಡೆಯುವ ಯಾವುದೇ ನಿರ್ದಿಷ್ಟ ಸಂಶೋಧನೆ ಅಥವಾ ಕಾರ್ಯಕ್ರಮಗಳಿಗಾಗಿ; ಮತ್ತು

(ಸಿ) ರಾಜ್ಯ ಕಾರ್ಯನೀತಿಯ ಬದಲಾವಣೆಗೆ ಒಳಪಟ್ಟು ಅಥವಾ ಅನ್ಯಥಾ ಇದೇ ಬಗೆಯ ವಿಶ್ವವಿದ್ಯಾಲಯಗಳಿಗಾಗಿ ಅಥವಾ ಅವುಗಳ ಪ್ರಯೋಜನಕ್ಕಾಗಿ,

–ಅನುದಾನದ ಮೂಲಕ ಅಥವಾ ಅನ್ಯಥಾ ಹಣಕಾಸು ಬೆಂಬಲವನ್ನು ಒದಗಿಸಬಹುದು:

3

ಮತ್ತು ಪರಂತು, ವಿಶ್ವವಿದ್ಯಾಲಯವು, ಯಾವುದೇ ಇತರ ಮೂಲದಿಂದ ಯಾವುದೇ ಆರ್ಥಿಕ ನೆರವನ್ನು ಸ್ವೀಕರಿಸಬಹುದು.

**6. ಘಟಕ ಕಾಲೇಜು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಅಥವಾ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದಕ್ಕೆ ಅಧಿಕಾರ.**– ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಐದು ವರ್ಷಗಳನ್ನು ಪೂರ್ಣಗೊಳಿಸಿದ ನಂತರ ವಿಶ್ವವಿದ್ಯಾಲಯ ಅನುದಾನ ಆಯೋಗದ ಮತ್ತು ಇತರ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ಗುಣಮಟ್ಟಗಳಿಗೆ ಒಳಪಟ್ಟು ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ವಿಶ್ವವಿದ್ಯಾಲಯವು, ರಾಜ್ಯದಲ್ಲಿ ತನಗೆ ಸೂಕ್ತವೆನಿಸುವಂಥ ಸ್ಥಳಗಳಲ್ಲಿ ಘಟಕ ಕಾಲೇಜುಗಳು, ಪ್ರಾದೇಶಿಕ ಕೇಂದ್ರಗಳು, ಹೆಚ್ಚುವರಿ ಕ್ಯಾಂಪಸ್‌ಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದಿರಬಹುದು.

**7. ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು.**– ವಿಶ್ವವಿದ್ಯಾಲಯವು, ತನ್ನ ಭವಿಷ್ಯದ್‌ದೃಷ್ಟಿ ಮತ್ತು ಧ್ಯೇಯೋದ್ದೇಶಗಳನ್ನು ಸಾಧಿಸಲು ಈ ಮುಂದಿನ ವಿಸ್ತೃತ ಕಾರ್ಯತಂತ್ರಗಳನ್ನು ಕೈಗೊಳ್ಳತಕ್ಕದ್ದು.–

(i) (ಎ) ಸಿವಿಲ್, ವಾಸ್ತು ಶಿಲ್ಪ (ಆರ್ಕಿಟೆಕ್ಚರ್), ಮೆಕ್ಯಾನಿಕಲ್, ಆಟೋಮೊಬೈಲ್, ಎಲೆಕ್ಟ್ರಿಕಲ್, ಎಲೆಕ್ಟ್ರಾನಿಕ್ಸ್ ಮತ್ತು ಸಂವಹನ (ಕಮ್ಯುನಿಕೇಷನ್), ಕಂಪ್ಯೂಟರ್ ಸೈನ್ಸ್ ಮತ್ತು ಇಂಜಿನಿಯರಿಂಗ್, ಮಾಹಿತಿ ತಂತ್ರಜ್ಞಾನ (ಇನ್‌ಫರ್‌ಮೇಷನ್ ಟೆಕ್ನಾಲಜಿ) 3–ಡಿಯನ್ನು ಒಳಗೊಂಡ ವಿನ್ಯಾಸ (ಡಿಸೈನ್) ಮತ್ತು ಮುದ್ರಣ ತಾಂತ್ರಿಕತೆ (ಪ್ರಿಂಟಿಂಗ್ ಟೆಕ್ನಾಲಜಿ), ಪರಿಸರ ಇಂಜಿನಿಯರಿಂಗ್ (ಎನ್ವಿರಾನ್ಮೆಂಟಲ್ ಇಂಜಿನಿಯರಿಂಗ್), ಜೈವಿಕ ತಂತ್ರಜ್ಞಾನ (ಬಯೊ–ಟೆಕ್ನಾಲಜಿ), ಬಾಹ್ಯಾಕಾಶ ತಂತ್ರಜ್ಞಾನ (ಸ್ಪೇಸ್ ಟೆಕ್ನಾಲಜಿ), ನ್ಯಾನೊ ವಿಷಯಗಳು ಮತ್ತು ತಂತ್ರಜ್ಞಾನ (ಟೆಕ್ನಾಲಜಿ) ಇವುಗಳನ್ನು ಒಳಗೊಂಡ ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ ಮತ್ತು ಅಂತರ ವಿಷಯಗಳು ಮುಂತಾದವುಗಳನ್ನು ಒಳಗೊಂಡಂತೆ ಇತರ ಹೊಸದಾಗಿ ರೂಪುಗೊಳ್ಳುತ್ತಿರುವ ಯಾವುದೇ ಕ್ಷೇತ್ರಗಳು;

(ಬಿ) ವೈದ್ಯಕೀಯ, ದಂತ ವೈದ್ಯಕೀಯ, ಆಯುರ್ವೇದ, ಹೋಮಿಯೋಪತಿ, ನ್ಯಾಚುರೋಪತಿ, ಔಷಧ ತಯಾರಿಕಾ ಶಾಸ್ತ್ರ, ನರ್ಸಿಂಗ್ ಇವುಗಳನ್ನು ಒಳಗೊಂಡ ಆರೋಗ್ಯ ವಿಜ್ಞಾನಗಳು ಮತ್ತು ಅಂತರ್ ವಿಷಯಗಳು ಮುಂತಾದವುಗಳನ್ನು ಒಳಗೊಂಡಂತೆ ಹೊಸದಾಗಿ ರೂಪುಗೊಳ್ಳುತ್ತಿರುವ ಯಾವುದೇ ಇತರ ಕ್ಷೇತ್ರಗಳು;

(ಸಿ) ಕೃಷಿ ವಿಜ್ಞಾನ ಮತ್ತು ತಂತ್ರಜ್ಞಾನ ಶಾಲೆ ಅಥವಾ ಕಾಲೇಜು ಅಥವಾ ಕೇಂದ್ರ;

(ಡಿ) ವ್ಯವಹಾರ ನಿರ್ವಹಣೆ, ಪ್ರವಾಸೋದ್ಯಮ ನಿರ್ವಹಣೆ, ಹೋಟೆಲ್ ನಿರ್ವಹಣೆ, ಆತಿಥ್ಯ ನಿರ್ವಹಣೆ, ಆಸ್ಪತ್ರೆ ನಿರ್ವಹಣೆ, ವಿಪತ್ತು ನಿರ್ವಹಣೆ, ಅಪಾಯ ನಿರ್ವಹಣೆಗಳನ್ನು ಒಳಗೊಂಡ ನಿರ್ವಹಣೆ ಮತ್ತು ತಾಂತ್ರಿಕತೆ; ಮತ್ತು ಅಂತರ್ ವಿಷಯಗಳು ಮುಂತಾದವುಗಳನ್ನು ಒಳಗೊಂಡಂತೆ ಹೊಸದಾಗಿ ರೂಪುಗೊಳ್ಳುತ್ತಿರುವ ಯಾವುದೇ ಇತರ ಕ್ಷೇತ್ರಗಳು;

(ಇ) ಭೌತಶಾಸ್ತ್ರ, ಎಲೆಕ್ಟ್ರಾನಿಕ್ಸ್, ಗಣಿತ ಶಾಸ್ತ್ರ, ಕಂಪ್ಯೂಟರ್ ಸೈನ್ಸ್, ರಾಸಾಯನಿಕ ಮತ್ತು ಪರಿಸರ ವಿಜ್ಞಾನ, ಜೀವಿ ವಿಜ್ಞಾನ, ಭೂ ವಿಜ್ಞಾನ, ಬಾಹ್ಯಾಕಾಶ ವಿಜ್ಞಾನ, ನ್ಯಾನೋ ವಿಜ್ಞಾನ ಮತ್ತು ನ್ಯಾನೋ ವಿಷಯಗಳನ್ನೂ ಒಳಗೊಂಡಂತೆ ನಿಸರ್ಗ ವಿಜ್ಞಾನ ಮತ್ತು ಅಂತರ್ ವಿಷಯಗಳು ಮುಂತಾದವುಗಳನ್ನು ಒಳಗೊಂಡಂತೆ ಅಧ್ಯಯನದ ಹೊಸದಾಗಿ ರೂಪುಗೊಳ್ಳುತ್ತಿರುವ ಯಾವುದೇ ಇತರ ಕ್ಷೇತ್ರ;

(ಎಫ್) ಇತಿಹಾಸ, ಕನ್ನಡ, ಅರ್ಥಶಾಸ್ತ್ರ, ರಾಜಕೀಯ ಶಾಸ್ತ್ರ, ಪತ್ರಿಕೋದ್ಯಮ, ಪ್ರವಾಸೋದ್ಯಮ, ಕಾನೂನು, ತತ್ತ್ವಶಾಸ್ತ್ರ, ಪುರಾಣಗಳು ಮತ್ತು ಪ್ರವಚನಗಳು, ಸಂಗೀತ, ಕಲೆ, 3–ಡಿ ವಿನ್ಯಾಸವನ್ನು ಒಳಗೊಂಡ ಫ್ಯಾಶನ್ ವಿನ್ಯಾಸ, ಆ್ಯನಿಮೇಷನ್, ಸಂಸ್ಕೃತಿ, ಸಾಮಾಜಿಕ ಕಾರ್ಯಗಳು, ಸಂಸ್ಕೃತ, ಆಂಗ್ಲ, ಇತರ ಭಾರತೀಯ ಮತ್ತು ವಿದೇಶಿ ಭಾಷೆಗಳನ್ನು ಒಳಗೊಂಡ ಮಾನವಿಕ ಶಾಸ್ತ್ರಗಳು ಮತ್ತು ಸಮಾಜ ವಿಜ್ಞಾನಗಳು ಹಾಗೂ ಅಂತರ ವಿಷಯ ಕ್ಷೇತ್ರಗಳನ್ನೂ ಒಳಗೊಂಡ ಹೊಸದಾಗಿ ರೂಪುಗೊಳ್ಳುತ್ತಿರುವ ಯಾವುದೇ ಇತರ ಕ್ಷೇತ್ರಗಳು;

(ಜಿ) ವಿಶ್ವದಾದ್ಯಂತ ಅಧ್ಯಯನದ ಹೊಸದಾಗಿ ರೂಪುಗೊಳ್ಳುತ್ತಿರುವ ಯಾವುದೇ ಇತರ ಕ್ಷೇತ್ರಗಳು ಅಥವಾ ಅಧ್ಯಯನದ ವಿಷಯಗಳು ಅಥವಾ ಕ್ಷೇತ್ರಗಳು.

–ಇಂಥ ವಿಷಯಗಳಲ್ಲಿ ಪ್ರಾರಂಭಿಕ ಶಿಕ್ಷಣ, ಪ್ರೌಢಶಿಕ್ಷಣ, ಉನ್ನತ ಶಿಕ್ಷಣಗಳಂಥ ವಿವಿಧ ಹಂತಗಳಲ್ಲಿ ಶಿಕ್ಷಣ, ಬೋಧನೆ ಮತ್ತು ಬರವಣಿಗೆ ಮತ್ತು ಓದನ್ನು ಒಳಗೊಂಡಂಥ ಕಲಿಕೆ, ತರಬೇತಿ, ಸಂಶೋಧನೆ ಮತ್ತು ಅಭಿವೃದ್ಧಿಗಳಿಗೆ ಅವಕಾಶವನ್ನು ಕಲ್ಪಿಸಿ ಜ್ಞಾನದ ಜಗತ್ತಿನ ಪರಿಧಿಯನ್ನು ವಿಸ್ತರಿಸುವುದು.

(ii) ಬೋಧಕರಿಗಾಗಿ, ಬೋಧಕ ಶಿಕ್ಷಕರಿಗಾಗಿ, ಉನ್ನತ ಹಾಗೂ ವೃತ್ತಿ ಶಿಕ್ಷಣ ಕ್ಷೇತ್ರಗಳಲ್ಲಿನ ಬೋಧಕರಿಗಾಗಿ, ಉನ್ನತ ಗುಣಮಟ್ಟದ ತರಬೇತಿ, ಸಾಮರ್ಥ್ಯ ನಿರ್ಮಾಣ ಮತ್ತು ಅಭಿವೃದ್ಧಿ ವ್ಯವಸ್ಥೆಯನ್ನು ಶಿಕ್ಷಣ ಮತ್ತು ಇತರ ವ್ಯವಸ್ಥೆಗಳಲ್ಲಿನ ರಾಜಕೀಯ ನಾಯಕರು, ಆಡಳಿತಗಾರರು ಮತ್ತು ಅಭಿವೃದ್ಧಿ ವೃತ್ತಿಪರರಿಗಾಗಿ ನಾಯಕತ್ವದ ತರಬೇತಿಯನ್ನು ವಿನ್ಯಾಸಗೊಳಿಸುವುದು ಮತ್ತು ನೀಡುವುದು;

(iii) (ಎ) ನಿರ್ಧಾರಣೆಯ ಆಧುನಿಕ ವಿಧಾನಗಳನ್ನು ಒಳಗೊಂಡಂತೆ ವಿವಿಧ ವಿಧಾನಗಳ ಮೂಲಕ ಮೌಲ್ಯಮಾಪನ ಮಾಡಿದ ಶೈಕ್ಷಣಿಕ ಕಾರ್ಯವನ್ನು ಯಶಸ್ವಿಯಾಗಿ ಪೂರೈಸಿರುವುದರ ಆಧಾರದ ಮೇಲೆ; ಮತ್ತು

(ಬಿ) ಮೂಲ ಪುಸ್ತಕ ಅಥವಾ ಪುಸ್ತಕಗಳ ಬರವಣಿಗೆ, ಸಂಶೋಧನಾ ಲೇಖನಗಳ ಪ್ರಕಟಣೆ, ಕಲಿಕೆಯ ವಿವಿಧ ಕ್ಷೇತ್ರಗಳಲ್ಲಿನ ತಜ್ಞ ವ್ಯಕ್ತಿಗಳು ಸಾಂಸ್ಕೃತಿಕ ಮತ್ತು ಆಧ್ಯಾತ್ಮಿಕ ಕ್ಷೇತ್ರಗಳಲ್ಲಿನ ಸೇವೆಗಳಂಥ ಅಸಾಧಾರಣ ಕೊಡುಗೆಗಳನ್ನು ನೀಡಿದುದರ ಆಧಾರದ ಮೇಲೆ,

–ಪದವಿಗಳನ್ನು, ಪಿಜಿ ಡಿಪ್ಲೊಮೊಗಳನ್ನು, ಒಳಗೊಂಡ ಡಿಪ್ಲೊಮೊಗಳನ್ನು, ದ್ವಿ ಪದವಿ, ಪ್ರೊಗ್ರಾಮ್‌ಗಳನ್ನು, ಸಂಯೋಜಿತ ಕೋರ್ಸುಗಳನ್ನು, ಪ್ರಮಾಣ ಪತ್ರಗಳನ್ನು ಮತ್ತು ಪಾರಿತೋಷಕಗಳು, ಯಶೋಪತ್ರ ಪ್ರದಾನದಂಥ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು.

(iv) ವಿದ್ಯಾರ್ಥಿಗಳಿಗೆ, ಬೋಧಕ ಸದಸ್ಯರಿಗೆ ಮತ್ತು ಇತರರಿಗೆ ನಿರ್ದಿಷ್ಟ ಶೈಕ್ಷಣಿಕ ಮತ್ತು ಸಂಶೋಧನಾ ಕಾರ್ಯಕ್ರಮಗಳು, ತರಬೇತಿ ಕಾರ್ಯಕ್ರಮಗಳು ಮತ್ತು ವಿಚಾರ ವಿನಿಮಯ ಕಾರ್ಯಕ್ರಮಗಳನ್ನು ಪರಿಕಲ್ಪಿಸಲು, ವಿನ್ಯಾಸಗೊಳಿಸಲು, ಅಭಿವೃದ್ಧಿಪಡಿಸಲು ಮತ್ತು ನೀಡಲು ಯಾವುವೇ ಇತರ ವಿಶ್ವವಿದ್ಯಾಲಯಗಳು ಸಂಶೋಧನಾ ಸಂಸ್ಥೆಗಳು, ಲಾಭರಹಿತ ಸಂಘಟನೆಗಳು, ಕೈಗಾರಿಕಾ ಸಂಘ, ವೃತ್ತಿಪರ ಸಂಘಗಳು ಅಥವಾ ಇತರ ಸಂಘಗಳೊಂದಿಗೆ ಸಹಯೋಗವನ್ನು ಕಲ್ಪಿಸುವುದು;

(v) ಉಪನ್ಯಾಸ ಮಾಲಿಕೆಗಳು, ವಿಚಾರ ಸಂಕಿರಣಗಳು, ಸಮ್ಮೇಳನಗಳು, ಕಾರ್ಯಾಂಗ ಶಿಕ್ಷಣ ಕಾರ್ಯಕ್ರಮಗಳು, ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳು, ಪ್ರಕಟಣೆಗಳು ಮತ್ತು ತರಬೇತಿ ಕಾರ್ಯಕ್ರಮಗಳು ಮತ್ತು ಕಾರ್ಯಸೂಚಿಗಳ ಮೂಲಕ ಜ್ಞಾನ ಪ್ರಸಾರ ಮಾಡುವುದು ಮತ್ತು ಶಿಕ್ಷಣ ಮತ್ತು ತತ್ಸಂಬಂಧಿತ ಅಭಿವೃದ್ಧಿ ಕ್ಷೇತ್ರಗಳ ವಿಷಯಗಳ ಬಗ್ಗೆ ಸಾರ್ವಜನಿಕ ಚರ್ಚೆಯನ್ನು ಏರ್ಪಡಿಸುವುದು;

(vi) ಒಂದೇ ತೆರನಾದ ದೃಷ್ಟಿ, ಗುರಿ, ಕಾರ್ಯತಂತ್ರದ ರಚನೆ ಮತ್ತು ಉದ್ದೇಶಗಳನ್ನು ಹೊಂದಿರುವ ಯಾವುದೇ ಇತರ ಸಂಸ್ಥೆ ಅಥವಾ ಸಂಸ್ಥೆಗಳೊಂದಿಗಿನ ಸಹಭಾಗಿತ್ವ, ಸಹಯೋಗ, ಸಹಕಾರ, ಸಹ-ಪಾಲುದಾರಿಕೆ, ಕಾರ್ಯತಂತ್ರ ಅಥವಾ ಪರಸ್ಪರ ಅನುಕೂಲಕರವಾದಂಥ ಯಾವುದೇ ವಿಧಾನದಿಂದ ವಿಶ್ವವಿದ್ಯಾಲಯದ ಬೋಧಕ ವೃಂದ (ಫ್ಯಾಕಲ್ಟಿ), ಸಂಶೋಧಕರು ಮತ್ತು ಪೂರಕ ಸಿಬ್ಬಂದಿಯ ಸುಧಾರಣೆ ಮತ್ತು ತರಬೇತಿಗಾಗಿ, ಕಾರ್ಯಕ್ರಮಗಳನ್ನು ಪ್ರಾರಂಭಿಸುವುದು ಮತ್ತು ಕೈಗೊಳ್ಳುವುದು;

(vii) ಯಾವುದೇ ಸಂಸ್ಥೆಯೊಂದಿಗೆ ಜೊತೆಗೂಡಿ ಸಂಶೋಧನೆಯನ್ನು ನಡೆಸುವುದು ಮತ್ತು ಸಮರ್ಥನೆಗೊಳಿಸುವುದು.

(viii) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದಕ್ಕಾಗಿ ಮತ್ತು ಉತ್ತೇಜಿಸುವುದಕ್ಕಾಗಿ ಅವಶ್ಯಕವಾದ ಮತ್ತು ಯುಕ್ತವಾದ ಕ್ರಮಗಳನ್ನು ಕೈಗೊಳ್ಳುವುದು;

(ix) ಶಿಕ್ಷಣ ಮತ್ತು ಇತರ ಅಭಿವೃದ್ಧಿ ವಲಯಗಳನ್ನು ವಿಸ್ತರಿಸುವುದಕ್ಕಾಗಿ ಸರ್ಕಾರವು ಅನುಮೋದಿಸಬಹುದಾದಂತೆ ಯಾವುವೇ ಧ್ಯೇಯೋದ್ದೇಶಗಳನ್ನು ಕೈಗೊಳ್ಳುವುದು.

**8. ವಿಶ್ವವಿದ್ಯಾಲಯದ ಅಧಿಕಾರಗಳು.**– ವಿಶ್ವವಿದ್ಯಾಲಯವು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗೆ ಅನುಸಾರವಾಗಿ ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿರ್ಧರಿಸಬಹುದಾದ ಅಂಥ ಕ್ಯಾಂಪಸ್ಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಕರ್ನಾಟಕದಲ್ಲಿ ಸ್ಥಾಪಿಸುವುದು ಮತ್ತು ನಿರ್ವಹಿಸುವುದು;

(ii) ವಿಶ್ವವಿದ್ಯಾಲಯದ ಉದ್ದೇಶವನ್ನು ಕಾರ್ಯರೂಪಕ್ಕೆ ತರುವಲ್ಲಿ ಅಗತ್ಯವಾಗಬಹುದಾದ ಅಥವಾ ಕಾರ್ಯಸಾಧ್ಯವಾಗಬಹುದಾದ ಎಲ್ಲಾ ಅಂಥ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು;

(iii) ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಮತ್ತು ಷರತ್ತುಗಳಿಗೊಳಪಟ್ಟು ಪದವಿಗಳು ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರದಾನಮಾಡುವುದು;

(iv) ಪರಿನಿಯಮಗಳನ್ವಯ ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿ ವೇತನಗಳು ಮತ್ತು ಬಹುಮಾನಗಳು, ಅವಾರ್ಡುಗಳು, ಪಾರಿತೋಷಕಗಳು ಇತ್ಯಾದಿಗಳನ್ನು ಸ್ಥಾಪಿಸುವುದು ಮತ್ತು ನೀಡುವುದು;

(v) ಪರಿನಿಯಮಗಳಲ್ಲಿ ಅಥವಾ ಸಂದರ್ಭಾನುಸಾರವಾಗಿ ನಿಯಮಗಳಲ್ಲಿ ನಿಗದಿಪಡಿಸಬಹುದಾದ ಅಂಥ ಶುಲ್ಕಗಳು, ಬಿಲ್ಲುಗಳು, ಖರೀದಿ ಪಟ್ಟಿಗಳನ್ನು ಕೇಳಿಪಡೆದುಕೊಳ್ಳುವುದು ಮತ್ತು ಸ್ವೀಕರಿಸುವುದು ಹಾಗೂ ಚಾರ್ಜುಗಳನ್ನು ವಸೂಲು ಮಾಡುವುದು;

(vi) ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಪಠ್ಯೇತರ ಚಟುವಟಿಕೆಗಳಿಗೆ ಅವಕಾಶಗಳನ್ನು ಕಲ್ಪಿಸುವುದು;

(vii) ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಕ್ಯಾಂಪಸುಗಳ, ಪ್ರಾದೇಶಿಕ ಕೇಂದ್ರಗಳ, ಅಧ್ಯಯನ ಕೇಂದ್ರಗಳ ಬೋಧಕ ಸಿಬ್ಬಂದಿ (ಫ್ಯಾಕಲ್ಟಿ), ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವುದು;

(viii) ವಿಶ್ವವಿದ್ಯಾಲಯದ ಅಥವಾ ಒಂದು ಘಟಕ ಕಾಲೇಜಿನ ಅಥವಾ ಕ್ಯಾಂಪಸ್ಸಿನ, ಪ್ರಾದೇಶಿಕ ಕೇಂದ್ರದ, ಅಧ್ಯಯನ ಕೇಂದ್ರದ ಉದ್ದೇಶಕ್ಕಾಗಿ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದಿರುವ, ಯಾವುದೇ ರೀತಿಯ ಸ್ವಯಂ ದೇಣಿಗೆಗಳು ಮತ್ತು ಕೊಡುಗೆಗಳನ್ನು ಸ್ವೀಕರಿಸುವುದು ಮತ್ತು ಸಂಘದ ಮತ್ತು ದತ್ತಿಯ ಸ್ವತ್ತುಗಳೂ ಸೇರಿದಂತೆ, ಯಾವುದೇ ಚರ ಅಥವಾ ಸ್ಥಿರ ಸ್ವತ್ತನ್ನು ಆರ್ಜಿಸುವುದು, ಹೊಂದಿರುವುದು, ನಿರ್ವಹಿಸುವುದು, ನಡೆಸುವುದು ಮತ್ತು ಹಸ್ತಾಂತರ ಮಾಡುವುದು;

(ix) ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸುವುದು ಹಾಗೂ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ ವಿದ್ಯಾರ್ಥಿಗಳಿಗೆ ವಸತಿ ಸ್ಥಳಗಳನ್ನು ಗುರುತು ಮಾಡುವುದು;

(x) ವಸತಿಯ ಮೇಲ್ವಿಚಾರಣೆ ಮಾಡುವುದು ಮತ್ತು ನಿಯಂತ್ರಣ ಮಾಡುವುದು ಹಾಗೂ ವಿದ್ಯಾರ್ಥಿಗಳು ಮತ್ತು ಎಲ್ಲಾ ಪ್ರವರ್ಗಗಳ ಸಿಬ್ಬಂದಿಗಳಲ್ಲಿ ಶಿಸ್ತು ನಿಯಂತ್ರಣ ಮಾಡುವುದು ಮತ್ತು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ನಡತೆ ಸಂಹಿತೆಯನ್ನು ರೂಪಿಸುವುದೂ ಒಳಗೊಂಡಂತೆ, ಅಂಥ ಸಿಬ್ಬಂದಿಗಳ ಸೇವಾಷರತ್ತುಗಳನ್ನು ನಿರೂಪಿಸುವುದು;

(xi) ಶೈಕ್ಷಣಿಕ, ಆಡಳಿತ ಮತ್ತು ಬೆಂಬಲ ಸಿಬ್ಬಂದಿಯ ಹುದ್ದೆಗಳನ್ನು ಮತ್ತು ಇತರ ಅವಶ್ಯಕ ಹುದ್ದೆಗಳನ್ನು ಸೃಜಿಸುವುದು;

(xii) ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನಿರ್ಧರಿಸಬಹುದಾದ ಅಂಥ ರೀತಿಯಲ್ಲಿ ಮತ್ತು ಅಂಥ ಉದ್ದೇಶಗಳಿಗಾಗಿ ಇತರ ವಿಶ್ವವಿದ್ಯಾಲಯಗಳೊಡನೆ ಸಹಕರಿಸುವುದು ಮತ್ತು ಸಹಯೋಗವನ್ನು ಹೊಂದುವುದು;

(xiii) ಶಿಕ್ಷಕರಿಗೆ, ಪಾಠಗಳನ್ನು ರಚಿಸುವವರಿಗೆ, ಮೌಲ್ಯಮಾಪಕರಿಗೆ ಮತ್ತು ಇತರ ಶೈಕ್ಷಣಿಕ ಸಿಬ್ಬಂದಿಗೆ ಪುನರ್ಮನನ ವ್ಯಾಸಂಗಕ್ರಮಗಳು, ಅಭಿಮುಖ ವ್ಯಾಸಂಗ ಕ್ರಮಗಳು, ಕಾರ್ಯಾಗಾರಗಳು, ವಿಚಾರಗೋಷ್ಠಿಗಳು ಮತ್ತು ಇತರ ಕಾರ್ಯಕ್ರಮಗಳನ್ನು ಏರ್ಪಡಿಸುವುದು ಮತ್ತು ನಡೆಸುವುದು;

(xiv) ಶೈಕ್ಷಣಿಕ ಪರಿಷತ್ತಿನ ಅನುಮೋದನೆಯೊಂದಿಗೆ ವಿಶ್ವವಿದ್ಯಾಲಯಕ್ಕೆ ಅಥವಾ ಘಟಕ ಕಾಲೇಜಿಗೆ, ಪ್ರಾದೇಶಿಕ ಕೇಂದ್ರಗಳಿಗೆ, ಅಧ್ಯಯನ ಕೇಂದ್ರಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮತ್ತು ಈ ಅಧಿನಿಯಮದಲ್ಲಿ ಕಲ್ಪಿಸಿದ ವ್ಯಾಪ್ತಿಗಿಂತ ಕಡಿಮೆಯಿಲ್ಲದಂತೆ ಕರ್ನಾಟಕದ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮಾನಕ ಗುಣಮಟ್ಟಗಳನ್ನು ನಿರ್ಧರಿಸುವುದು;

(xv) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಕಾರ್ಯರೂಪಕ್ಕೆ ತರಲು ಅವಶ್ಯವಾಗಬಹುದಾದಂಥ ಇತರ ಎಲ್ಲಾ ಕ್ರಮಗಳನ್ನು ಅಥವಾ ಕಾರ್ಯಗಳನ್ನು, ಅವು ಮೇಲೆ ಹೇಳಿದ ಅಧಿಕಾರಗಳಿಗೆ ಪ್ರಾಸಂಗಿಕವಾಗಿರಲಿ ಅಥವಾ ಇಲ್ಲದಿರಲಿ, ಕೈಗೊಳ್ಳುವುದು;

(xvi) ಪರೀಕ್ಷೆಗಳ ಆಧಾರದ ಮೇಲೆ ಅಥವಾ ಸರ್ಕಾರದಿಂದ ಅನುಮೋದಿತವಾದ ಇತರ ಯಾವುದೇ ಮೌಲ್ಯಮಾಪನ ವಿಧಾನದ ಆಧಾರದ ಮೇಲೆ ನೀಡಲು ಪದವಿಗಳು, ಡಿಪ್ಲೋಮಾಗಳು, ಪ್ರಮಾಣಪತ್ರಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಸ್ಥಾಪಿಸುವುದು;

(xvii) ಫಿಲಂಗಳು, ಕ್ಯಾಸೆಟ್‌ಗಳು, ಧ್ವನಿಸುರುಳಿಗಳು, ದೃಶ್ಯಸುರುಳಿಗಳು, ಸಿ.ಡಿ., ವಿ.ಸಿ.ಡಿ. ಮತ್ತು ಇತರ ತಂತ್ರಾಂಶಗಳೂ ಹಾಗೂ ಇತರ ಸಂಬಂಧಿತ ವಿದ್ಯುನ್ಮಾನ ಮತ್ತು ಮುದ್ರಣ ಮಾಧ್ಯಮವೂ ಸೇರಿದಂತೆ ಬೋಧಕ ಸಾಮಗ್ರಿಗಳನ್ನು ತಯಾರಿಸುವುದಕ್ಕಾಗಿ ಅವಕಾಶ ಕಲ್ಪಿಸುವುದು;

(xviii) ಪ್ರಬಂಧಕ ಮಂಡಳಿಯ ಅನುಮೋದನೆಯೊಡನೆ ವಿಶ್ವವಿದ್ಯಾಲಯದ ಉದ್ದೇಶಗಳಿಗಾಗಿ ವಿಶ್ವವಿದ್ಯಾಲಯದ ಸ್ವತ್ತುಗಳನ್ನು ಭದ್ರತೆಯಾಗಿ ನೀಡಿ ಅಥವಾ ನೀಡದೆ ಹಣವನ್ನು ಪಡೆಯುವುದು, ಸಂಗ್ರಹಿಸುವುದು, ಚಂದಾದಾರರಾಗುವುದು ಮತ್ತು ಸಾಲ ಪಡೆಯುವುದು;

(xix) ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುವೇ ಇತರ ಶೈಕ್ಷಣಿಕ ಸಂಸ್ಥೆಗಳ ಆಡಳಿತವನ್ನು ಪಡೆದುಕೊಳ್ಳುವುದು, ವಹಿಸಿಕೊಳ್ಳುವುದು ಮತ್ತು ನಡೆಸುವುದು;

(xx) ವ್ಯವಸ್ಥಾಪನಾ ಮಂಡಳಿಯ ಪೂರ್ವಾನುಮೋದನೆಯೊಂದಿಗೆ ಸ್ವತ್ತುಗಳನ್ನು ಆರ್ಜಿಸುವುದು;

(xxi) ವಿಶ್ವವಿದ್ಯಾಲಯದ ಮೇಲಿನ ಉದ್ದೇಶಗಳಿಗೆ ಸಂಬಂಧಿಸಿದ ಅಥವಾ ಪ್ರಾಸಂಗಿಕವಾದ ಯಾವುದೇ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು.

**9. ವಿಶ್ವವಿದ್ಯಾಲಯವು ಎಲ್ಲಾ ವರ್ಗಗಳು, ಜಾತಿಗಳು, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲರಿಗೂ ಮುಕ್ತವಾಗಿರತಕ್ಕದ್ದು.–** ವಿಶ್ವವಿದ್ಯಾಲಯದ ಪ್ರವೇಶಗಳು ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲಾ ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು. ಎಲ್ಲಾ ಪ್ರವೇಶಗಳನ್ನು ಅರ್ಹತಾ ಪರೀಕ್ಷೆಗಳಲ್ಲಿನ ಅರ್ಹತೆಯ ಆಧಾರದ ಮೇಲೆ ಮಾಡತಕ್ಕದ್ದು:

ಪರಂತು, ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳ ಪ್ರವೇಶದಲ್ಲಿ ಶೇಕಡಾ ನಲವತ್ತರಷ್ಟನ್ನು ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ಮೀಸಲಿಡತಕ್ಕದ್ದು ಮತ್ತು ಪ್ರವೇಶಗಳನ್ನು ರಾಜ್ಯ ಸರ್ಕಾರವು ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡತಕ್ಕದ್ದು ಮತ್ತು ಸೀಟುಗಳನ್ನು ಅರ್ಹತೆ ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ರೂಪಿಸುವ ಮೀಸಲಾತಿ ನೀತಿಗೆ ಅನುಸಾರವಾಗಿ ಹಂಚಿಕೆ ಮಾಡತಕ್ಕದ್ದು:

ಮತ್ತು ಪರಂತು, ಯಾವುದೇ ಕೋರ್ಸಿನಲ್ಲಿ ಹತ್ತಕ್ಕಿಂತ ಕಡಿಮೆ ಸೀಟುಗಳು ಇರುವಲ್ಲಿ, ಸ್ನಾತಕೋತ್ತರ ಇಂಥ ಕೋರ್ಸುಗಳನ್ನು ಒಟ್ಟಿಗೆ ಒಂದುಗೂಡಿಸುವ ಮೂಲಕ ಮೀಸಲಿಡತಕ್ಕದ್ದು ಮತ್ತು ಯಾವುದೇ ಕೋರ್ಸಿನಲ್ಲಿ ಮೂರು ಸೀಟುಗಳಿಗಿಂತ ಕಡಿಮೆ ಇರುವಲ್ಲಿ, ಅವುಗಳನ್ನು ಸುತ್ತು ಸರದಿಯಲ್ಲಿ ಮೀಸಲಿಡತಕ್ಕದ್ದು.

**10. ರಾಷ್ಟ್ರೀಯ ಅಧಿಮಾನ್ಯತೆ.–** ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಆದಷ್ಟು ಬೇಗನೆ ಸಂಬಂಧಪಟ್ಟ ಶಾಸನಾತ್ಮಕ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳಿಂದ ಅಧಿಮಾನ್ಯತೆಯನ್ನು ಕೋರತಕ್ಕದ್ದು ಮತ್ತು ಖಾಸಗಿ ವಿಶ್ವವಿದ್ಯಾಲಯಗಳು ನಡೆಸುವ ಎಲ್ಲಾ ಕೋರ್ಸುಗಳು ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ವಿನಿಯಮಗಳಿಗೆ ಅನುಸಾರವಾಗಿ ಇರತಕ್ಕದ್ದು.

**11. ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು.–** ಪ್ರಾಯೋಜಕ ಸಂಸ್ಥೆಯು ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದಂತೆ ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಇವುಗಳಲ್ಲಿ ಪ್ರತಿಯೊಂದನ್ನು ಪ್ರಾಯೋಜಕ ಸಂಸ್ಥೆಯು ತನ್ನ ವಿವೇಚನಾನುಸಾರ ಚಲಾಯಿಸಬಹುದು, ಎಂದರೆ:–

(i) ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಪುನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(ii) ವಿಶ್ವವಿದ್ಯಾಲಯದ ಪ್ರಥಮ ಪ್ರಬಂಧಕ ಮಂಡಳಿಯನ್ನು ರಚಿಸುವುದು;

(iii) ಪ್ರಬಂಧಕ ಮಂಡಳಿಯ ಅಧ್ಯಕ್ಷರನ್ನು ನಾಮನಿರ್ದೇಶಿಸುವುದು;

(iv) ಪ್ರಬಂಧಕ ಮಂಡಳಿಯ ಸದಸ್ಯರಾಗಿ ಮೂರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(v) ವ್ಯವಸ್ಥಾಪನಾ ಮಂಡಳಿಯ ಸದಸ್ಯರಾಗಿ ಇಬ್ಬರು ವ್ಯಕ್ತಿಗಳನ್ನು ನಾಮ ನಿರ್ದೇಶಿಸುವುದು;

5

(vi) ವಿಶ್ವವಿದ್ಯಾಲಯದ ದತ್ತಿ ನಿಧಿಗೆ ದೇಣಿಗೆ ನೀಡಲು ನಿಧಿ ಮೂಲಗಳನ್ನು ನಿರ್ಧರಿಸುವುದು;

(vii) ವಿಶ್ವವಿದ್ಯಾಲಯದ ಹಣದ ವಿನಿಯೋಗ ಮತ್ತು ವೆಚ್ಚ ಮಾಡುವುದನ್ನು ನಿರ್ಧರಿಸುವುದು;

(viii) ಪ್ರಬಂಧಕ ಮಂಡಳಿಯ ಸಭೆಯಲ್ಲಿಯ ಯಾವುವೇ ವಿವಾದಗಳನ್ನು ಈ ಅಧಿನಿಯಮದಲ್ಲಿ ಉಪಬಂಧಿಸಿರುವ ವಿಧಾನದಲ್ಲಿ ಬಗೆಹರಿಸುವುದು;

## ಅಧ್ಯಾಯ – III

## ವಿಶ್ವವಿದ್ಯಾಲಯದ ಅಧಿಕಾರಿಗಳು

12. **ವಿಶ್ವವಿದ್ಯಾಲಯದ ಅಧಿಕಾರಿಗಳು.–** ಈ ಮುಂದಿನವರು ವಿಶ್ವವಿದ್ಯಾಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:–

(i) ಸಂದರ್ಶಕರು;

(ii) ಸಹ–ಸಂದರ್ಶಕರು;

(iii) ಕುಲಾಧಿಪತಿಗಳು;

(iv) ಕುಲಪತಿಗಳು;

(v) ಸಹಕುಲಪತಿಗಳು;

(vi) ಕುಲಸಚಿವರು;

(vii) ಹಣಕಾಸು ಅಧಿಕಾರಿ;

(viii) ಡೀನ್;

(ix) ಕುಲಸಚಿವರು ಮೌಲ್ಯಮಾಪನ; ಮತ್ತು

(x) ಪರಿನಿಯಮಗಳ ಮೂಲಕ ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಘೋಷಿಸಬಹುದಾದ ಅಂಥ ಇತರ ಅಧಿಕಾರಿಗಳು.

**13. ಸಂದರ್ಶಕರು.–** (1) ಕರ್ನಾಟಕದ ಘನತೆವೆತ್ತ ರಾಜ್ಯಪಾಲರು ವಿಶ್ವವಿದ್ಯಾಲಯದ ಸಂದರ್ಶಕರಾಗಿರತಕ್ಕದ್ದು ಮತ್ತು ಸಂದರ್ಶಕರು ವಿಶ್ವವಿದ್ಯಾಲಯದ ಕಾರ್ಯನಿರ್ವಹಣೆಯ ಸುಧಾರಣೆಗಾಗಿ ಸಲಹೆಗಳನ್ನು ನೀಡಬಹುದು.

(2) ಸಂದರ್ಶಕರು, ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಸಂದರ್ಶಕರು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ವ್ಯವಹಾರಗಳಿಗೆ ಸಂಬಂಧಿಸಿದಂತೆ, ಯಾವುದೇ ಪತ್ರ ಅಥವಾ ಮಾಹಿತಿಯನ್ನು ತರಿಸಿಕೊಳ್ಳುವುದು;

(ii) ಸಂದರ್ಶಕರು, ಅವರು ಸ್ವೀಕರಿಸಿದ ಮಾಹಿತಿಯ ಆಧಾರದ ಮೇಲೆ ವಿಶ್ವವಿದ್ಯಾಲಯಗಳ ಯಾವುದೇ ಪ್ರಾಧಿಕಾರವು ಮಾಡಿದ ಯಾವುದೇ ಆದೇಶ, ನಡೆಸಿದ ವ್ಯವಹರಣೆಗಳು ಅಥವಾ ಕೈಗೊಂಡ ತೀರ್ಮಾನಗಳು, ಈ ಅಧಿನಿಯಮಕ್ಕೆ, ವಿನಿಯಮಗಳಿಗೆ ಅಥವಾ ನಿಯಮಗಳಿಗೆ ಪೂರಕವಾಗಿಲ್ಲವೆಂದು ಮನಗಂಡರೆ ಅವರು ವಿಶ್ವವಿದ್ಯಾಲಯದ ಹಿತಾಸಕ್ತಿಯಿಂದ ತಾವು ಸೂಕ್ತವೆಂದು ಭಾವಿಸಬಹುದಾದ ಅಂಥ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಹಾಗೆ ಹೊರಡಿಸಿದ ನಿರ್ದೇಶನಗಳನ್ನು ಸಂಬಂಧಪಟ್ಟವರೆಲ್ಲರೂ ಪಾಲಿಸತಕ್ಕದ್ದು.

**14. ಸಹ–ಸಂದರ್ಶಕರು.–** (1) ಕರ್ನಾಟಕ ಸರ್ಕಾರದ ಮಾನ್ಯ ಉನ್ನತ ಶಿಕ್ಷಣ ಸಚಿವರು ವಿಶ್ವವಿದ್ಯಾಲಯದ ಸಹ–ಸಂದರ್ಶಕರಾಗಿರತಕ್ಕದ್ದು.

(2) ಸಂದರ್ಶಕರ ಅನುಪಸ್ಥಿತಿಯಲ್ಲಿ ಸಹ–ಸಂದರ್ಶಕರು ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**15. ಕುಲಾಧಿಪತಿಗಳು.–** (1) ಕುಲಾಧಿಪತಿಯವರನ್ನು ಪ್ರಾಯೋಜಕ ಸಂಸ್ಥೆಯು ನೇಮಿಸತಕ್ಕದ್ದು.

(2) ಪ್ರಾಯೋಜಕ ಸಂಸ್ಥೆಯ ಸಂಸ್ಥಾಪಿತ ನ್ಯಾಸಧಾರಿಯು ಮೊದಲನೇ ಕುಲಾಧಿಪತಿಗಳಾಗಿರತಕ್ಕದ್ದು, ಅವರು ತಮ್ಮ ಜೀವನಪರ್ಯಂತ ಅಥವಾ ಅವರು ತಮ್ಮ ಪದವನ್ನು ಬಿಟ್ಟುಕೊಡುವವರೆಗೆ ಕುಲಾಧಿಪತಿಗಳಾಗಿ ಪದಧಾರಣ ಮಾಡಿರತಕ್ಕದ್ದು.

(3) ತದನಂತರದ ಕುಲಾಧಿಪತಿಗಳು, ಅಂಥ ನೇಮಕಾತಿಯನ್ನು ಪರಿಗಣಿಸುವ ಸಂದರ್ಭದಲ್ಲಿ ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ, ಪ್ರಾಯೋಜಕ ಸಂಸ್ಥೆಯ ನ್ಯಾಸಧಾರಿಯಾಗಿರತಕ್ಕದ್ದು ಅಥವಾ ಶಿಕ್ಷಣ, ವಿಜ್ಞಾನ, ಸಂಸ್ಕೃತಿ ಅಥವಾ ಸಾರ್ವಜನಿಕ ಜೀವನ ಕ್ಷೇತ್ರಗಳಲ್ಲಿ ರಾಷ್ಟ್ರೀಯ ಮಟ್ಟದ ಛಾಪನ್ನು ಪಡೆದಿರುವ ಅಂಥ ಇತರ ವ್ಯಕ್ತಿಯಾಗಿರತಕ್ಕದ್ದು.

(4) ಹಾಗೆ ನೇಮಕಗೊಂಡ ತದನಂತರದ ಕುಲಾಧಿಪತಿಗಳು ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ಪದಧಾರಣ ಮಾಡತಕ್ಕದ್ದು.

(5) ಕುಲಾಧಿಪತಿಗಳು ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳ ಅಡಿಯಲ್ಲಿ ಅವರಿಗೆ ಪ್ರದಾನ ಮಾಡಬಹುದಾದ ಅಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು, ಅವುಗಳಲ್ಲಿ ಈ ಮುಂದಿನ ಅಧಿಕಾರಗಳು ಒಳಗೊಂಡಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುವುದು;

(ii) ಸಂದರ್ಶಕರ ಮತ್ತು ಸಹ–ಸಂದರ್ಶಕರಿಬ್ಬರ ಗೈರುಹಾಜರಿಯಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಘಟಿಕೋತ್ಸವಗಳಲ್ಲಿ ಅಧ್ಯಕ್ಷತೆಯನ್ನು ವಹಿಸುವುದು;

(iii) ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವುದು;

(iv) ಈ ಅಧಿನಿಯಮ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಅನುಸಾರವಾಗಿ ಕುಲಪತಿಗಳನ್ನು ನೇಮಿಸುವುದು ಅಥವಾ ಪುನರ್ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(v) ಈ ಅಧಿನಿಯಮದ 16ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ನಾಮನಿರ್ದೇಶಕ ಸಮಿತಿಯ ಸದಸ್ಯರಾಗಿ ಒಬ್ಬ ವ್ಯಕ್ತಿಯನ್ನು ನಾಮನಿರ್ದೇಶನ ಮಾಡುವುದು;

(vi) ಸಹಕುಲಪತಿಗಳು, ಡೀನ್, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿಗಳ ನೇಮಕಾತಿಯನ್ನು ಪೂರ್ವಾನುಮೋದಿಸುವುದು;

(vii) ಪ್ರಬಂಧಕ ಮಂಡಳಿಯ ಸದಸ್ಯರನ್ನಾಗಿ ಇಬ್ಬರು ಶಿಕ್ಷಣ ತಜ್ಞರನ್ನು ನಾಮನಿರ್ದೇಶಿಸುವುದು;

(viii) ಮೊದಲ ಸಹಕುಲಪತಿಗಳು ಮತ್ತು ಹಣಕಾಸು ಅಧಿಕಾರಿಗಳನ್ನು ನೇಮಿಸುವುದು;

(ix) ಮೊದಲ ವ್ಯವಸ್ಥಾಪನಾ ಮಂಡಳಿ, ಹಣಕಾಸು ಸಮಿತಿ, ಸಂಶೋಧನಾ ಪರಿಷತ್ತು ಹಾಗೂ ಶೈಕ್ಷಣಿಕ ಪರಿಷತ್ತುಗಳನ್ನು ರಚಿಸುವುದು;

(x) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ ಕಾರ್ಯಸೂಚಿ ವಿಷಯಗಳನ್ನು ಪೂರ್ವಾನುಮೋದಿಸುವುದು;

(xi) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ (ಪ್ರಬಂಧಕ ಮಂಡಳಿಯ ಸಭೆಯಲ್ಲಿ ಉಂಟಾದ ವಿವಾದಗಳನ್ನು ಹೊರತುಪಡಿಸಿ) ವಿವಾದಗಳನ್ನು ಪರಿಹರಿಸುವುದು.

(6) ಪದಾಧಿಕಾರಿ ಅಥವಾ ಸಂಸ್ಥೆ ಮತ್ತು ವಿಶ್ವವಿದ್ಯಾಲಯದ ಯಾವುದೇ ಇತರ ಪದಾಧಿಕಾರಿ ಅಥವಾ ಸಂಸ್ಥೆಗಳ ನಡುವೆ ವಿವಾದಗಳು ಉಂಟಾದಲ್ಲಿ, ಆ ವಿವಾದವನ್ನು ಕುಲಾಧಿಪತಿಯವರ ಪರ್ಯಾಲೋಚನೆಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿವಾದದ ಸಂದರ್ಭದಲ್ಲಿ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**16. ಕುಲಪತಿಗಳು.–** (1) (2)ನೇ ಉಪಪ್ರಕರಣದ ಉಪಬಂಧಗಳಿಗೆ ಅನುಸಾರವಾಗಿ ನಾಮನಿರ್ದೇಶಕ ಸಮಿತಿಯು ಶಿಫಾರಸ್ಸು ಮಾಡಿದ ಮೂರು ವ್ಯಕ್ತಿಗಳ ಪೈಕಿಯಿಂದ ಒಬ್ಬರನ್ನು ಮೂರು ವರ್ಷಗಳ ಅವಧಿಗಾಗಿ ಕುಲಪತಿಗಳನ್ನಾಗಿ, ಪರಿನಿಯಮಗಳಲ್ಲಿ ನಿಯಮಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರು

ನೇಮಿಸತಕ್ಕದ್ದು. ಮೂರು ವರ್ಷಗಳ ಅವಧಿಯು ಮುಗಿದ ತರುವಾಯ, ಇದನ್ನು ಮೂರು ವರ್ಷಗಳ ಮತ್ತೊಂದು ಅವಧಿಗೆ ನವೀಕರಿಸಬಹುದು:

ಪರಂತು, ಕುಲಪತಿಯವರು, ತಮ್ಮ ಅವಧಿ ಮುಗಿದ ನಂತರವೂ ಹೊಸ ಕುಲಪತಿಯವರು ಸೇರಿಕೊಳ್ಳುವವರೆಗೆ ಪದದಲ್ಲಿ ಮುಂದುವರೆಯತಕ್ಕದ್ದು. ಆದಾಗ್ಯೂ ಈ ಅವಧಿಯು ಯಾವುದೇ ಸಂದರ್ಭದಲ್ಲಿ ಒಂದು ವರ್ಷವನ್ನು ಮೀರತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಹೇಳಿರುವ ನಾಮನಿರ್ದೇಶಕ ಸಮಿತಿಯಲ್ಲಿ ಈ ಮುಂದಿನ ವ್ಯಕ್ತಿಗಳು ಇರತಕ್ಕದ್ದು, ಎಂದರೆ:-

(i) ಕುಲಾಧಿಪತಿಯವರು ನಾಮನಿರ್ದೇಶಿಸಿದ ಒಬ್ಬ ವ್ಯಕ್ತಿ;

(ii) ಪ್ರಬಂಧಕ ಮಂಡಳಿಯ ಇಬ್ಬರು ನಾಮ ನಿರ್ದೇಶಿತರು, ಇವರಲ್ಲಿ ಒಬ್ಬರನ್ನು ಪ್ರಬಂಧಕ ಮಂಡಳಿಯು ಸಮಿತಿಯ ಸಂಚಾಲಕರೆಂದು ನಾಮನಿರ್ದೇಶಿಸತಕ್ಕದ್ದು.

(3) ನಾಮನಿರ್ದೇಶಕ ಸಮಿತಿಯು, ಅರ್ಹತೆಯ ಆಧಾರದ ಮೇಲೆ ಕುಲಪತಿಯ ಹುದ್ದೆಗೆ ಸೂಕ್ತವಾದ ಮೂರು ವ್ಯಕ್ತಿಗಳ ಹೆಸರನ್ನು ಶಿಫಾರಸ್ಸು ಮಾಡತಕ್ಕದ್ದು ಮತ್ತು ಅದನ್ನು ಪ್ರತಿಯೊಬ್ಬ ವ್ಯಕ್ತಿಯ ವಿದ್ಯಾರ್ಹತೆ ಮತ್ತಿತರ ವಿಶಿಷ್ಟ ಪ್ರಶಸ್ತಿಗಳನ್ನು ತಿಳಿಸುವ ಒಂದು ಸಂಕ್ಷಿಪ್ತ ವರದಿಯೊಂದಿಗೆ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು.

(4) ಕುಲಪತಿಯವರು ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಹಣಾ ಮತ್ತು ಶೈಕ್ಷಣಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣವನ್ನು ಚಲಾಯಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯದ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೊಳಿಸತಕ್ಕದ್ದು:

ಪರಂತು, ಶಿಕ್ಷಕರ ನೇಮಕಾತಿಯನ್ನು ಹೊರತುಪಡಿಸಿ ಕೂಡಲೇ ಕ್ರಮವನ್ನು ಕೈಗೊಳ್ಳಬೇಕಾದ ತುರ್ತು ಸ್ವರೂಪದ ಯಾವುದೇ ಇತರ ವಿಷಯಗಳಲ್ಲಿ ಮತ್ತು ಅದನ್ನು ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ವಿಶ್ವವಿದ್ಯಾಲಯವು ಇದಕ್ಕಾಗಿ ಅಧಿಕೃತಗೊಳಿಸಿದ್ದ ಯಾವೊಬ್ಬ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ಇತರ ಸಂಸ್ಥೆಯು ಕೂಡಲೇ ಕ್ರಮಕೈಗೊಳ್ಳುವುದು ಸಾಧ್ಯವಿರದಿರುವಾಗ ಕುಲಪತಿಯವರು ತಾನು ಸೂಕ್ತವೆಂದು ಭಾವಿಸಬಹುದಾದಂತಹ ಕ್ರಮವನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆದು ಕೈಗೊಳ್ಳತಕ್ಕದ್ದು.

(5) ಕುಲಪತಿಯವರು ಪರಿನಿಯಮಗಳು ಅಥವಾ ನಿಯಮಗಳಲ್ಲಿ ಹೇಳಲಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು:

ಪರಂತು, ಕುಲಪತಿಗಳ ಅಭಿಪ್ರಾಯದಲ್ಲಿ, ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಯಾವುದೇ ನಿರ್ಣಯವು, ಈ ಅಧಿನಿಯಮ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳು, ವಿನಿಯಮಗಳು ಅಥವಾ ನಿಯಮಗಳ ಮೂಲಕ ಪ್ರದತ್ತವಾದ ಅಧಿಕಾರದ ಹೊರಗಿದ್ದರೆ ಅಥವಾ ವಿಶ್ವವಿದ್ಯಾಲಯದ ಹಿತಾಸಕ್ತಿಗೆ ಪ್ರತಿಕೂಲವಾಗಬಹುದಾಗಿದ್ದರೆ, ಅದರ ನಿರ್ಣಯದ ದಿನಾಂಕದಿಂದ ಹದಿನೈದು ದಿನಗಳ ಒಳಗೆ ತನ್ನ ನಿರ್ಣಯವನ್ನು ಪರಿಷ್ಕರಿಸಲು ಸಂಬಂಧಪಟ್ಟ ಪ್ರಾಧಿಕಾರವನ್ನು ಆತನು ಕೋರತಕ್ಕದ್ದು ಮತ್ತು ಪ್ರಾಧಿಕಾರವು ಅಂಥ ನಿರ್ಣಯವನ್ನು ಸಂಪೂರ್ಣವಾಗಿ ಅಥವಾ ಭಾಗಶ:ವಾಗಿ ಪರಿಷ್ಕರಿಸಲು ನಿರಾಕರಿಸಿದ ಸಂದರ್ಭದಲ್ಲಿ ಅಥವಾ ಹದಿನೈದು ದಿನಗಳೊಳಗೆ ಯಾವುದೇ ನಿರ್ಣಯವನ್ನು ತೆಗೆದುಕೊಳ್ಳಲು ವಿಫಲವಾದಲ್ಲಿ, ನಂತರ ಅಂಥ ವಿಷಯವನ್ನು ಕುಲಾಧಿಪತಿಗಳಿಗೆ ಕಳುಹಿಸತಕ್ಕದ್ದು ಮತ್ತು ಈ ಬಗ್ಗೆ ಇವರ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

(6) ಕುಲಪತಿಯವರ ಸೇವೆಗಳನ್ನು, ಪ್ರಬಂಧಕ ಮಂಡಳಿಯ ಅನುಮೋದನೆಯೊಂದಿಗೆ ಮತ್ತು ಸಹಜ ನ್ಯಾಯದ ತತ್ವಗಳನ್ನು ಅನುಸರಿಸಿದ ನಂತರ ಹಾಗೂ ಶಿಸ್ತಿನ ಆಧಾರದ ಮೇಲೆ ಅಂತ್ಯಗೊಳಿಸುವ ಸಂದರ್ಭವೂ ಸೇರಿದಂತೆ, ಪ್ರಕರಣದ ಬಗ್ಗೆ ಕುಲಪತಿಯು ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡಿದ ತರುವಾಯ, ಕುಲಾಧಿಪತಿಯವರು ಅಂತ್ಯಗೊಳಿಸಬಹುದು.

(7) ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಸಂದರ್ಶಕರು, ಸಹ-ಸಂದರ್ಶಕರು ಮತ್ತು ಕುಲಾಧಿಪತಿಯವರು ಇವರುಗಳ ಗೈರು ಹಾಜರಿಯ ಸಂದರ್ಭದಲ್ಲಿ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**17. ಸಹಕುಲಪತಿಗಳು.-** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಮೂರು ಜನರನ್ನು ಮೀರದಂತೆ ಸಹಕುಲಪತಿಗಳನ್ನು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**18. ವ್ಯಾಸಂಗ ವಿಭಾಗಗಳ ಡೀನ್‌ಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ತೆದುಕೊಂಡು ಪರಿನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವ್ಯಾಸಂಗ ವಿಭಾಗಗಳ ಡೀನ್‌ಗಳನ್ನು ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**19. ಕುಲಸಚಿವರು.–** (1) ಕುಲಾಧಿಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರ ಲಿಖಿತ ಅನುಮೋದನೆಯೊಂದಿಗೆ, ಕುಲಸಚಿವರನ್ನು ನೇಮಕ ಮಾಡತಕ್ಕದ್ದು.

(2) ಪರಿನಿಯಮಗಳಲ್ಲಿ ಪರಿಭಾಷಿಸಿರುವಂಥ ಎಲ್ಲಾ ಕರಾರುಗಳನ್ನು ವಿಶ್ವವಿದ್ಯಾಲಯದ ಪರವಾಗಿ ಕುಲಸಚಿವರು ಮಾಡಿಕೊಳ್ಳತಕ್ಕದ್ದು ಮತ್ತು ಅದಕ್ಕೆ ಸಹಿ ಹಾಕತಕ್ಕದ್ದು.

(3) ಕುಲಸಚಿವರು ವಿಶ್ವವಿದ್ಯಾಲಯದ ಪರವಾಗಿ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಪರಿನಿಯಮಗಳಿಂದ ಪ್ರದತ್ತಗೊಳಿಸಬಹುದಾದಂಥ ಅಥವಾ ಕುಲಾಧಿಪತಿಯವರು ಮತ್ತು ಕುಲಪತಿಯವರು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು ವಿಶ್ವವಿದ್ಯಾಲಯದ ದಾಖಲೆಗಳು ಮತ್ತು ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು, ಕುಲಪತಿಯವರು ಅಥವಾ ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಅಂಥ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿತಕ್ಕದ್ದು.

**20. ಹಣಕಾಸು ಅಧಿಕಾರಿ.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು, ಪರಿನಿಯಮಗಳ ಮೂಲಕ ಪ್ರದತ್ತಗೊಳಿಸಬಹುದಾದ ಅಂಥ ವಿಧಾನದಲ್ಲಿ ಹಣಕಾಸು ಅಧಿಕಾರಿಯನ್ನು ನೇಮಕ ಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**21. ಇತರ ಅಧಿಕಾರಿಗಳು.–** ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ ನೇಮಕಾತಿಯ ವಿಧಾನ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಕರ್ತವ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ – IV

## ವಿಶ್ವವಿದ್ಯಾಲಯದ ಪ್ರಾಧಿಕಾರಗಳು

**22. ವಿಶ್ವವಿದ್ಯಾಲಯದ ಪ್ರಾಧಿಕಾರಗಳು.–** ಈ ಮುಂದಿನವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:–

(i) ಪ್ರಬಂಧಕ ಮಂಡಳಿ;

(ii) ವ್ಯವಸ್ಥಾಪನ ಮಂಡಳಿ;

(iii) ಶೈಕ್ಷಣಿಕ ಪರಿಷತ್ತು;

(iv) ಸಂಶೋಧನಾ ಪರಿಷತ್ತು;

(v) ಹಣಕಾಸು ಸಮಿತಿ; ಮತ್ತು

(vi) ವಿಶ್ವವಿದ್ಯಾಲಯದ ಪ್ರಾಧಿಕಾರಗಳೆಂದು ಪರಿನಿಯಮಗಳ ಮೂಲಕ ಘೋಷಿಸಬಹುದಾದ ಅಂಥ ಇತರ ಪ್ರಾಧಿಕಾರಗಳು.

**23. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು.–** (1) ಪ್ರಬಂಧಕ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು – ಅಧ್ಯಕ್ಷರು;

(ii) ಕುಲಪತಿಯವರು – ಸದಸ್ಯರು;

(iii) ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಅಥವ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(iv) ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(v) ರಾಜ್ಯ ಸರ್ಕಾರವು ನಾಮ ನಿರ್ದೇಶನ ಮಾಡಿದ ಆಡಳಿತವನ್ನು ಒಳಗೊಂಡಂತೆ ವ್ಯವಸ್ಥಾಪನೆ, ಹಣಕಾಸು ಅಥವಾ ಯಾವುದೇ ಇತರ ವಿಶೇಷ ಕ್ಷೇತ್ರದಲ್ಲಿನ ಒಬ್ಬರು ತಜ್ಞರು;

(vi) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಇಬ್ಬರು ವ್ಯಕ್ತಿಗಳು ಅವರ ಪೈಕಿ ಒಬ್ಬರು ಮಹಿಳೆಯಾಗಿರತಕ್ಕದ್ದು;

(vii) ಸಹ ಕುಲಪತಿಯವರು ಮತದಾನದ ಹಕ್ಕಿಲ್ಲದ ಸದಸ್ಯರಾಗಿರತಕ್ಕದ್ದು;

(viii) ವಿಶ್ವವಿದ್ಯಾಲಯ ಅನುದಾನ ಆಯೋಗದ ನಾಮನಿರ್ದೇಶಿತ ಒಬ್ಬ ಸುಪ್ರಸಿದ್ಧ ಶಿಕ್ಷಣ ತಜ್ಞರು.

(2) ಕುಲಸಚಿವರು ಪ್ರಬಂಧಕ ಮಂಡಳಿಯ ಮತ ದಾನದ ಹಕ್ಕಿರದ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ಪ್ರಬಂಧಕ ಮಂಡಳಿಯ ಸದಸ್ಯರ ಪದಾವಧಿ, ಸರ್ಕಾರದಿಂದ ನಾಮನಿರ್ದೇಶಿತರಾದ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ನೇಮಕಾತಿ, ನವೀಕರಣ ಮತ್ತು ತೆಗೆದುಹಾಕುವುದು ಮುಂತಾದವುಗಳು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಾಧಿಪತಿಯವರು ಯಾವಾಗಲೂ ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರ ಗೈರುಹಾಜರಿಯಲ್ಲಿ ಕುಲಾಧಿಪತಿಯವರಿಂದ ನಾಮನಿರ್ದೇಶಿತರಾದ ಯಾರಾದರೂ ಒಬ್ಬರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು. ಅಂಥ ಸಭೆಯ ಅಧ್ಯಕ್ಷತೆಯನ್ನು ವಹಿಸುವುದಕ್ಕೆ ಕುಲಾಧಿಪತಿಯವರು ಯಾವೊಬ್ಬ ವ್ಯಕ್ತಿಯನ್ನೂ ನಾಮನಿರ್ದೇಶನ ಮಾಡಿರದಿದ್ದಲ್ಲಿ, ಸಭೆಯಲ್ಲಿ ಹಾಜರಿರುವ ಸದಸ್ಯರು ಸರಳ ಬಹುಮತದ ಮೂಲಕ ಅವರುಗಳ ಪೈಕಿಯಿಂದಲೇ ಆ ಸಭೆಯ ಅಧ್ಯಕ್ಷನನ್ನು ಚುನಾಯಿಸತಕ್ಕದ್ದು.

(5) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಿಗೆ, ಅಂಥ ಸಭೆಯಲ್ಲಿ ಹಾಜರಿದ್ದು ನೀಡುವ ಮೂರು ಜನ ಸದಸ್ಯರು ಗಣಪೂರ್ತಿ (ಕೋರಂ) ಆಗಿರತಕ್ಕದ್ದು:

ಪರಂತು, ಪ್ರಬಂಧಕ ಮಂಡಳಿಯ ಯಾವುದೇ ಸಭೆಯ ಕೋರಂ ಪೂರ್ಣವಾಗಬೇಕಾದರೆ ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಿರುವುದು ಮತ್ತು ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಾಗದೇ ಇದ್ದಾಗ ಕುಲಪತಿಯವರು ಹಾಜರಿರುವುದು ಯಾವಾಗಲೂ ಅವಶ್ಯವಾಗಿರತಕ್ಕದ್ದು.

(6) ಪ್ರಬಂಧಕ ಮಂಡಳಿಯು ವಿಶ್ವವಿದ್ಯಾಲಯದ ಪ್ರಧಾನ ಪ್ರಬಂಧಕ ಸಂಸ್ಥೆಯಾಗಿರತಕ್ಕದ್ದು ಮತ್ತು ಅದು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಕಗೊಳಿಸುವುದು;

(ii) ವಿಶ್ವವಿದ್ಯಾಲಯವು ಅನುಸರಿಸಬೇಕಾದ ಕಾರ್ಯನೀತಿಗಳನ್ನು ರಚಿಸುವುದು;

(iii) ಈ ಅಧಿನಿಯಮದ ಅಥವಾ ಪರಿನಿಯಮಗಳ ಅಥವಾ ನಿಯಮಗಳ ಉಪಬಂಧಗಳಿಗೆ ಅನುಗುಣವಾಗಿ ಇರದ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ತೀರ್ಮಾನಗಳನ್ನು ಪುನರೀಕ್ಷಿಸುವುದು;

(iv) ವಿಶ್ವವಿದ್ಯಾಲಯದ ಆಯವ್ಯಯ ಮತ್ತು ವಾರ್ಷಿಕ ವರದಿಗಳನ್ನು ಅನುಮೋದಿಸುವುದು;

(v) ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸುವುದು ಅಥವಾ ಈಗಾಗಲೇ ಇರುವ ಪರಿನಿಯಮಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವುದು ಅಥವಾ ನಿರಸನಗೊಳಿಸುವುದು;

(vi) ವಿಶ್ವವಿದ್ಯಾಲಯವನ್ನು ಸ್ವಯಂಸಮಾಪನಗೊಳಿಸುವ ನಿರ್ಧಾರವನ್ನು ತೆಗೆದುಕೊಳ್ಳುವುದು;

(vii) ಸರ್ಕಾರಕ್ಕೆ ಸಲ್ಲಿಸುವ ಪ್ರಸ್ತಾವಗಳನ್ನು ಅನುಮೋದಿಸುವುದು;

(viii) ಶುಲ್ಕ ನಿಯಂತ್ರಣ ಸಮಿತಿಗೆ ಮೂವರು ಸದಸ್ಯರನ್ನು ನಾಮನಿರ್ದೇಶನ ಮಾಡುವುದು;

(ix) ವಿಶ್ವವಿದ್ಯಾಲಯದ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕೆ ಅಪೇಕ್ಷಣೀಯವೆಂದು ಕಂಡುಬರುವಂಥ ತೀರ್ಮಾನಗಳನ್ನು ಮತ್ತು ಕ್ರಮಗಳನ್ನು ಕೈಗೊಳ್ಳುವುದು.

(7) ಪ್ರಬಂಧಕ ಮಂಡಳಿಯು ಒಂದು ವರ್ಷದಲ್ಲಿ ಕನಿಷ್ಠ ಮೂರು ಸಲ ಸಭೆ ಸೇರತಕ್ಕದ್ದು.

(8) ಕಾರ್ಯಸೂಚಿ ವಿಷಯದ ಪರವಾಗಿ ಕುಲಾಧಿಪತಿಯವರು ಸಕಾರಾತ್ಮಕ ಮತದಾನವನ್ನು ಅನುಸರಿಸಿದ ಹೊರತಾಗಿ ಯಾವುದೇ ಕಾರ್ಯಸೂಚಿ ವಿಷಯಗಳ ಸಂಬಂಧದಲ್ಲಿ, ತಮ್ಮ ಸಭೆಯಲ್ಲಿ ಪ್ರಬಂಧಕ ಮಂಡಳಿಯು ಯಾವುದೇ ಗೊತ್ತುವಳಿಯನ್ನು ಹೊರಡಿಸತಕ್ಕದ್ದಲ್ಲ ಅಥವಾ ಯಾವುದೇ ನಿರ್ಧಾರವನ್ನು ಕೈಗೊಳ್ಳತಕ್ಕದ್ದಲ್ಲ.

(9) ಪ್ರಬಂಧಕ ಮಂಡಳಿಯ ಸಭೆಯ ಅಭಿಪ್ರಾಯದಲ್ಲಿ ವಿವಾದ ಉಂಟಾದ ಸಂದರ್ಭದಲ್ಲಿ, ವಿಷಯವನ್ನು ಪ್ರಾಯೋಜಕ ಸಂಸ್ಥೆಗೆ ಉಲ್ಲೇಖಿಸತಕ್ಕದ್ದು ಮತ್ತು ಅಂಥ ವಿಷಯದ ಸಂಬಂಧದಲ್ಲಿ ಪ್ರಾಯೋಜಕ ಸಂಸ್ಥೆಯ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ಮೇಲೆ ಬಂಧನಕಾರಿಯಾಗಿರತಕ್ಕದ್ದು.

**24. ವ್ಯವಸ್ಥಾಪನಾ ಮಂಡಳಿ.**– (1) ವ್ಯವಸ್ಥಾಪನಾ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಗಳು;

(ii) ಸಹಕುಲಪತಿಗಳು;

(iii) ಕುಲಸಚಿವರು;

(iv) ಪ್ರಾಯೋಜಕ ಸಂಸ್ಥೆಯ ಇಬ್ಬರು ನಾಮನಿರ್ದೇಶಿತರು;

(v) ಕುಲಾಧಿಪತಿಗಳು ನಾಮನಿರ್ದೇಶಿಸಬಹುದಾದ ವ್ಯಾಸಂಗ ವಿಭಾಗಗಳ ಇಬ್ಬರು ಡೀನ್‌ಗಳು;

(vi) ಕುಲಸಚಿವರು ಮೌಲ್ಯಮಾಪನ.

(2) ಕುಲಪತಿಯು ವ್ಯವಸ್ಥಾಪನಾ ಮಂಡಳಿಯ ಅಧ್ಯಕ್ಷನಾಗಿರತಕ್ಕದ್ದು ಮತ್ತು ರಿಜಿಸ್ಟ್ರಾರನು, ರಿಜಿಸ್ಟ್ರಾರನ ಗೈರು ಹಾಜರಿಯಲ್ಲಿ, ರಿಜಿಸ್ಟ್ರಾರ್ ಮೌಲ್ಯಮಾಪನ ಕುಲಾಧಿಪತಿಯವರ ಪೂರ್ವಾನುಮೋದನೆಯೊಂದಿಗೆ ವ್ಯವಸ್ಥಾಪನಾ ಮಂಡಳಿಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ವ್ಯವಸ್ಥಾಪನಾ ಮಂಡಳಿಯು ವಿಶ್ವವಿದ್ಯಾಲಯದ ಕಾರ್ಯನಿರ್ವಹಣಾ ಸಂಸ್ಥೆಯಾಗಿರತಕ್ಕದ್ದು. ವ್ಯವಸ್ಥಾಪನಾ ಮಂಡಳಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ವ್ಯವಸ್ಥಾಪನಾ ಮಂಡಳಿಯ ಎಲ್ಲಾ ಸಭೆಗಳಲ್ಲಿ ಯಾವಾಗಲೂ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು ಹಾಗೂ ಕುಲಪತಿಯವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೇ ಇದ್ದ ಸಂದರ್ಭದಲ್ಲಿ ಸಭೆಯಲ್ಲಿ ಹಾಜರಿರುವ ಸದಸ್ಯರು ಚುನಾಯಿಸಿದ ಯಾವುದೇ ಇತರ ಸದಸ್ಯರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ವ್ಯವಸ್ಥಾಪನಾ ಮಂಡಳಿಯ ಸಭೆಯಲ್ಲಿ ಯಾವುದೇ ವಿಷಯವನ್ನು ಕುರಿತು ವಿವಾದ ಉಂಟಾದಲ್ಲಿ ಸದರಿ ವಿಷಯವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯದ ಬಗ್ಗೆ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**25. ಶೈಕ್ಷಣಿಕ ಪರಿಷತ್ತು.**–(1) ಶೈಕ್ಷಣಿಕ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಕಾರ್ಯದರ್ಶಿಗಳು

(iv) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(v) ಕುಲಸಚಿವರು ಮೌಲ್ಯಮಾಪನ – ಸದಸ್ಯರು

(vi) ಕುಲಾಧಿಪತಿಯವರ ಒಬ್ಬ ನಾಮನಿರ್ದೇಶಿತರು – ಸದಸ್ಯರು

(2) ಶೈಕ್ಷಣಿಕ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಶೈಕ್ಷಣಿಕ ಸಂಸ್ಥೆಯಾಗಿರತಕ್ಕದ್ದು ಮತ್ತು ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಹಾಗೂ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಶೈಕ್ಷಣ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**26. ಸಂಶೋಧನಾ ಪರಿಷತ್ತು.–** (1) ಸಂಶೋಧನಾ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಸಂಶೋಧನಾ ಸಮಿತಿಯಾಗಿರತಕ್ಕದ್ದು ಹಾಗೂ ಸಂಶೋಧನಾ ಕ್ಷೇತ್ರದ ಆದ್ಯತೆಯೂ ಒಳಗೊಂಡಂತೆ, ವಿಶ್ವವಿದ್ಯಾಲಯವು ಕೈಗೊಳ್ಳಬೇಕಾದ ಸಂಶೋಧನೆಯ ಬಗ್ಗೆ ಒಂದು ವ್ಯಾಪಕವಾದ ಪರಿಪೂರ್ಣ ಭವಿಷ್ಯದ್ ದೃಷ್ಟಿಯನ್ನು ಒದಗಿಸತಕ್ಕದ್ದು. ಈ ಪರಿಷತ್ತು, ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಮತ್ತು ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಸಂಶೋಧನಾ ಮತ್ತು ಅನ್ವೇಷಣಾ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ಸಂಶೋಧನಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಸಂಶೋಧನೆಯ ಡೀನ್ – ಕಾರ್ಯದರ್ಶಿ

(iv) ಅನ್ವೇಷಣಾ ವಿಭಾಗದ ಮುಖ್ಯಸ್ಥರು – ಸದಸ್ಯರು

(V) ಎಲ್ಲಾ ವ್ಯಾಸಂಗ ವಿಭಾಗಗಳ ಡೀನ್‌ಗಳು – ಸದಸ್ಯರು ಮತ್ತು

(Vi) ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

**27. ಹಣಕಾಸು ಸಮಿತಿ.–** (1) ಹಣಕಾಸು ಸಮಿತಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು – ಅಧ್ಯಕ್ಷರು

(ii) ಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಸದಸ್ಯರು

(iv) ಹಣಕಾಸು ಅಧಿಕಾರಿ – ಕಾರ್ಯದರ್ಶಿ

(V) ಕುಲಾಧಿಪತಿಯವರ ಒಬ್ಬ ನಾಮನಿರ್ದೇಶಿತರು – ಸದಸ್ಯರು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು; ಮತ್ತು

(vii) ಕುಲಸಚಿವರು ಮೌಲ್ಯಮಾಪನ – ಸದಸ್ಯರು

(2) ಹಣಕಾಸು ಸಮಿತಿಯು ಹಣಕಾಸಿನ ವಿಷಯಗಳನ್ನು ಕೈಗೊಳ್ಳುವ ವಿಶ್ವವಿದ್ಯಾಲಯದ ಪ್ರಧಾನ ಹಣಕಾಸು ಸಂಸ್ಥೆಯಾಗಿರತಕ್ಕದ್ದು ಹಾಗೂ ಅದು ಈ ಅಧಿನಿಯಮ, ನಿಯಮಗಳು ಮತ್ತು ಪರಿನಿಯಮಗಳ ಉಪಬಂಧಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಹಣಕಾಸು ವಿಷಯಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**28. ಇತರ ಪ್ರಾಧಿಕಾರಗಳು.–** ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ರಚನೆ, ಅಧಿಕಾರಗಳು ಹಾಗೂ ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

**29. ಒಂದು ಪ್ರಾಧಿಕಾರದ ಅಥವಾ ಸಂಸ್ಥೆಯ ಸದಸ್ಯತ್ವಕ್ಕೆ ಅನರ್ಹತೆ.–** ವಿಶ್ವವಿದ್ಯಾಲಯದ ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಒಬ್ಬ ವ್ಯಕ್ತಿಯು,–

(ಎ) ಅಸ್ವಸ್ಥ ಚಿತ್ತನಾಗಿದ್ದು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿಸಲ್ಪಟ್ಟಿದ್ದರೆ;

(ಬಿ) ಅವಿಮುಕ್ತ ದಿವಾಳಿಯಾಗಿದ್ದರೆ;

(ಸಿ) ನೈತಿಕ ಅಧಃಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದರೆ;

(ಡಿ) ಖಾಸಗಿ ಬೋಧನಾ ತರಗತಿಗಳನ್ನು ನಡೆಸುತ್ತಿದ್ದರೆ ಅಥವಾ ಸ್ವತಃ ನಿರತನಾಗಿದ್ದರೆ;

(ಇ) ಯಾವುದೇ ವಿಧದಲ್ಲಿ, ಎಲ್ಲಿಯೇಯಾಗಲಿ, ಯಾವುದೇ ಪರೀಕ್ಷೆಯನ್ನು ನಡೆಸುವಲ್ಲಿ ಅನುಚಿತ ಅಭ್ಯಾಸದಲ್ಲಿ ತೊಡಗಿದ್ದಕ್ಕಾಗಿ ಅಥವಾ ಉತ್ತೇಜಿಸಿದ್ದಕ್ಕಾಗಿ ದಂಡಿತನಾಗಿದ್ದರೆ;

(ಎಫ್) ಪ್ರಾಯೋಜಿತ ಸಂಸ್ಥೆಯು ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಯಾವೊಬ್ಬ ಸದಸ್ಯನು ಆ ಪದವನ್ನು ಹೊಂದಿರುವುದಕ್ಕೆ ಅರ್ಹನಲ್ಲನೆಂದು ಲಿಖಿತದಲ್ಲಿ ಅಭಿಪ್ರಾಯ ನೀಡಿದಾಗಲೆಲ್ಲಾ,

– ಸದಸ್ಯನಾಗಿರುವುದಕ್ಕೆ ಅನರ್ಹನಾಗತಕ್ಕದ್ದು.

**30. ಖಾಲಿಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಕಾರ್ಯ ಅಥವಾ ವ್ಯವಹರಣೆಗಳು ಕೇವಲ ಅದರಲ್ಲಿ ಯಾವುದೇ ಖಾಲಿಸ್ಥಾನ ಇದೆ ಎಂಬ ಕಾರಣದಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣದಿಂದ ಮಾತ್ರವೇ ಅಸಿಂಧುವಾಗತಕ್ಕದ್ದಲ್ಲ.

**31. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು.–** (1) ಯಾವುವೇ ಕಾರ್ಯಸೂಚಿ ವಿಷಯಗಳನ್ನು ಕುಲಾಧಿಪತಿಯವರ ಪೂರ್ವಾನುಮೋದನೆಯನ್ನು ಪಡೆಯದೇ ಪ್ರಬಂಧಕ ಮಂಡಳಿಯ ಅಥವಾ ವ್ಯವಸ್ಥಾಪನಾ ಮಂಡಳಿಯ ಅಥವಾ ಯಾವುದೇ ಸಮಿತಿಯ ಸಭೆಗಳ ಕಾರ್ಯಸೂಚಿ ವಿಷಯಗಳಲ್ಲಿ ಸೇರಿಸತಕ್ಕದ್ದಲ್ಲ ಅಥವಾ ಚರ್ಚೆಗೆ ತೆಗೆದುಕೊಳ್ಳತಕ್ಕದ್ದಲ್ಲ ಅಥವಾ ತೀರ್ಮಾನಿಸತಕ್ಕದ್ದಲ್ಲ.

(2) ಈ ಅಧಿನಿಯಮದ ಯಾವುದೇ ಉಪಬಂಧಗಳನ್ನು ಪಾಲಿಸದೆ ಇರುವ ಉಲ್ಲಂಘನೆಯ ಸಂದರ್ಭದಲ್ಲಿ, ಕುಲಾಧಿಪತಿಯವರು ವಿಶ್ವವಿದ್ಯಾಲಯದ ಯಾವುದೇ ಪದಾಧಿಕಾರಿ ಅಥವಾ ಸಂಸ್ಥೆಯು ತೆಗೆದುಕೊಂಡ ಎಲ್ಲಾ ತೀರ್ಮಾನಗಳನ್ನು ವಿಪರ್ಯಯಗೊಳಿಸುವ ಮೂಲಕ ಪರಿಹಾರ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಅಧಿಕಾರವನ್ನು ಎಲ್ಲಾ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಅಂಥ ಪರಿಹಾರ ಕ್ರಮದ ಪರಿಣಾಮವಾಗಿ, ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ವಿಶ್ವವಿದ್ಯಾಲಯದ ಪದಾಧಿಕಾರಿ ಅಥವಾ ಸಂಸ್ಥೆಯು ಕೈಗೊಂಡಿದ್ದ ಎಲ್ಲಾ ಅಂಥ ಕ್ರಮಗಳು, ಮೊದಲಿನಿಂದಲೂ ಶೂನ್ಯ ಮತ್ತು ಅಕೃತ ಎಂದು ಭಾವಿಸತಕ್ಕದ್ದು ಹಾಗೂ ತತ್ಪರಿಣಾಮವಾಗಿ, ಉಪಬಂಧ ಪಾಲಿಸದೇ ಇದ್ದ ವಿಷಯ ಅಥವಾ ನಿರ್ಧಾರದ ಸಂಬಂಧದಲ್ಲಿ ಅದಕ್ಕೆ ಮುಂಚೆ ಇದ್ದ ವಸ್ತುಸ್ಥಿತಿಯೇ ಮುಂದುವರಿಯತಕ್ಕದ್ದು.

## ಅಧ್ಯಾಯ – V

## ಪರಿನಿಯಮಗಳು ಮತ್ತು ವಿನಿಯಮಗಳು

**32. ಪರಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಪರಿನಿಯಮಗಳು, ವಿಶ್ವವಿದ್ಯಾಲಯಕ್ಕೆ ಮತ್ತು ಸಿಬ್ಬಂದಿಗೆ ಸಂಬಂಧಿಸಿದ ಎಲ್ಲಾ ಅಥವಾ ಯಾವುದೇ ವಿಷಯಕ್ಕೆ ಈ ಕೆಳಗಿನಂತೆ ಉಪಬಂಧ ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಕಾರ್ಯಕಲಾಪಗಳನ್ನು ನಡೆಸುವ ಮತ್ತು ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸದಿರುವ ಸಂಸ್ಥೆಗಳ ರಚನೆಯ ಕಾರ್ಯವಿಧಾನ;

(ii) ಶಾಶ್ವತ ಶಾಸನಬದ್ಧ ದತ್ತಿ ನಿಧಿ, ವಿಶ್ವವಿದ್ಯಾಲಯ ದತ್ತಿ ನಿಧಿ, ಸಾಮಾನ್ಯ ನಿಧಿ ಹಾಗೂ ಅಭಿವೃದ್ಧಿ ನಿಧಿಗಳ ನಿರ್ವಹಣೆ;

(iii) ಕುಲಪತಿಗಳು, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರ ನೇಮಕಾತಿಯ ನಿಬಂಧನೆಗಳು ಹಾಗೂ ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಪ್ರಕಾರ್ಯಗಳು;

(iv) ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ, ಅಧ್ಯಾಪಕರ ಮತ್ತು ನೌಕರರ ನೇಮಕಾತಿ ವಿಧಾನ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(v) ವಿಶ್ವವಿದ್ಯಾಲಯ ಹಾಗೂ ಅದರ ಅಧಿಕಾರಿಗಳು, ವ್ಯಾಸಂಗ ವಿಭಾಗದ (ಫ್ಯಾಕಲ್ಟಿ) ಸದಸ್ಯರು, ನೌಕರರು ಹಾಗೂ ವಿದ್ಯಾರ್ಥಿಗಳ ನಡುವೆ ಉಂಟಾದ ವಿವಾದಗಳನ್ನು ಪರಿಹರಿಸುವ ಕಾರ್ಯವಿಧಾನ;

(vi) ವಿಭಾಗಗಳು ಮತ್ತು ವ್ಯಾಸಂಗ ವಿಭಾಗಗಳ (ಫ್ಯಾಕಲ್ಟಿಗಳ) ಸೃಜನೆ, ರದ್ದತಿ ಅಥವಾ ಪುನಾರಚನೆ;

(vii) ಇತರ ವಿಶ್ವವಿದ್ಯಾಲಯಗಳು ಅಥವಾ ಉನ್ನತ ಕಲಿಕಾ ಸಂಸ್ಥೆಗಳ ಜೊತೆಯಲ್ಲಿ ಸಹಕರಿಸಬೇಕಾದ ರೀತಿ;

(viii) ಗೌರವ ಪದವಿಗಳ ನೀಡಿಕೆಯ ಕಾರ್ಯವಿಧಾನ;

(ix) ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿವೇತನ ಮಂಜೂರಾತಿಗೆ ಸಂಬಂಧಿಸಿದ ಉಪಬಂಧಗಳು;

(x) ವಿವಿಧ ವ್ಯಾಸಂಗ ಕ್ರಮಗಳಲ್ಲಿನ ಸೀಟುಗಳ ಸಂಖ್ಯೆಗೆ ಸಂಬಂಧಿಸಿದ ಕಾರ್ಯನೀತಿಗಳು ಮತ್ತು ಅಂಥ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಕಾರ್ಯವಿಧಾನ;

(xi) ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಶುಲ್ಕಕ್ಕೆ ಸಂಬಂಧಿಸಿದ ಕಾರ್ಯನೀತಿ;

(xii) ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಉಚಿತ ಶಿಕ್ಷಣ (ಫ್ರಿಶಿಪ್), ಪದಕಗಳು ಹಾಗೂ ಬಹುಮಾನಗಳನ್ನು ಪ್ರಾರಂಭಿಸುವುದು;

(xiii) ಪ್ರಬಂಧಕ ಮಂಡಳಿಯು ನಿರ್ಧರಿಸಬಹುದಾದ ಅಥವಾ ಈ ಅಧಿನಿಯಮದ ಅಡಿಯಲ್ಲಿ ಪರಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬೇಕಾದ ಅಗತ್ಯತೆಯುಳ್ಳ ಯಾವುದೇ ಇತರ ವಿಷಯಗಳು.

**33. ಪರಿನಿಯಮಗಳ ರಚನೆ ವಿಧಾನ.**- (1) ವ್ಯವಸ್ಥಾಪನಾ ಮಂಡಳಿಯು ರಚಿಸಿದ ಮೊದಲ ಪರಿನಿಯಮಗಳನ್ನು ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ವ್ಯವಸ್ಥಾಪನಾ ಮಂಡಳಿಯು ಸಲ್ಲಿಸಿದ ಮೊದಲ ಪರಿನಿಯಮಗಳನ್ನು ಪ್ರಬಂಧಕ ಮಂಡಳಿಯು ಪರಿಗಣಿಸತಕ್ಕದ್ದು ಹಾಗೂ ತಾನು ಅವಶ್ಯವೆಂದು ಭಾವಿಸಬಹುದಾದ ಅಂಥ ಮಾರ್ಪಾಡುಗಳು, ಯಾವುದಾದರು ಇದ್ದಲ್ಲಿ, ಅವುಗಳೊಡನೆ ತನ್ನ ಅನುಮೋದನೆಯನ್ನು ನೀಡತಕ್ಕದ್ದು.

(3) ವಿಶ್ವವಿದ್ಯಾಲಯವು, ಪ್ರಬಂಧಕ ಮಂಡಳಿಯು ಅನುಮೋದಿಸಿದ ಮೊದಲ ಪರಿನಿಯಮಗಳನ್ನು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ಪ್ರಕಟಿಸತಕ್ಕದ್ದು ಮತ್ತು ತದನಂತರ ಮೊದಲ ಪರಿನಿಯಮಗಳ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**34. ಪರಿನಿಯಮಗಳ ತಿದ್ದುಪಡಿಯ ಅಧಿಕಾರ.**- ಪ್ರಬಂಧಕ ಮಂಡಳಿಯು ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸಬಹುದು ಅಥವಾ ಪರಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ಅವನ್ನು ನಿರಸನಗೊಳಿಸಬಹುದು.

**35. ವಿನಿಯಮಗಳು.**- ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ವಿನಿಯಮಗಳು ಈ ಮುಂದಿನ ವಿಷಯಗಳಿಗೆ ಉಪಬಂಧಗಳನ್ನು ಕಲ್ಪಿಸಬಹುದು, ಎಂದರೆ:-

(i) ವಿಶ್ವವಿದ್ಯಾಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ವಿದ್ಯಾರ್ಥಿ ಪಟ್ಟಿಯಲ್ಲಿ ಅವರುಗಳ ದಾಖಲಾತಿ ಹಾಗೂ ಮುಂದುವರಿಕೆ;

(ii) ವಿಶ್ವವಿದ್ಯಾಲಯದ ಎಲ್ಲಾ ಪದವಿಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ನಿಗದಿಪಡಿಸತಕ್ಕ ವ್ಯಾಸಂಗ ಕ್ರಮಗಳು;

(iii) ಪದವಿಗಳ ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರದಾನ;

(iv) ಸಂಶೋಧನಾ ವೇತನಗಳು (ಫೆಲೋಶಿಪ್), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಪದಕಗಳು ಮತ್ತು ಬಹುಮಾನಗಳನ್ನು ನೀಡಲು ಷರತ್ತುಗಳು;

(v) ಪರೀಕ್ಷೆಗಳನ್ನು ನಡೆಸುವುದು ಹಾಗೂ ಪರೀಕ್ಷೆ ನಡೆಸುವ ಸಂಸ್ಥೆಗಳು, ಪರೀಕ್ಷಕರು, ಪರೀಕ್ಷಾ ಮೇಲ್ವಿಚಾರಕರು, ಟ್ಯಾಬುಲೇಟರ್‌ಗಳು ಮತ್ತು ಮಾಡರೇಟರ್‌ಗಳ ನೇಮಕಾತಿಯ ಷರತ್ತುಗಳು ಮತ್ತು ವಿಧಾನ ಹಾಗೂ ಅವರ ಕರ್ತವ್ಯಗಳು;

(vi) ವಿಶ್ವವಿದ್ಯಾಲಯದ ಪರೀಕ್ಷೆಗಳ, ಪದವಿಗಳ ಹಾಗೂ ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರವೇಶಕ್ಕೆ ವಿಧಿಸತಕ್ಕ ಶುಲ್ಕ;

(vii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನಲ್ಲಿ ವಿದ್ಯಾರ್ಥಿಗಳ ನಿವಾಸಕ್ಕಾಗಿ ಷರತ್ತುಗಳು;

(viii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಶಿಸ್ತು ಪಾಲನೆ;

(ix) ಈ ಅಧಿನಿಯಮದ ಅಡಿಯಲ್ಲಿನ ಪರಿನಿಯಮಗಳಲ್ಲಿ ಉಪಬಂಧ ಕಲ್ಪಿಸಬಹುದಾಂಥ ಇತರ ಎಲ್ಲಾ ವಿಷಯಗಳು.

**36. ವಿನಿಯಮಗಳ ರಚನೆ ವಿಧಾನ.**- ವಿನಿಯಮಗಳನ್ನು ಶೈಕ್ಷಣಿಕ ಪರಿಷತ್ತು ರಚಿಸತಕ್ಕದ್ದು ಹಾಗೂ ವ್ಯವಸ್ಥಾಪನಾ ಮಂಡಳಿಯು ಅನುಮೋದಿಸತಕ್ಕದ್ದು.

**37. ವಿನಿಯಮಗಳ ತಿದ್ದುಪಡಿಗೆ ಅಧಿಕಾರ.–** ವ್ಯವಸ್ಥಾಪನಾ ಮಂಡಳಿಯ ಅನುಮೋದನೆಯೊಡನೆ ಶೈಕ್ಷಣಿಕ ಪರಿಷತ್ತು ಹೊಸ ವಿನಿಯಮಗಳನ್ನು ಅಥವಾ ಹೆಚ್ಚುವರಿ ವಿನಿಯಮಗಳನ್ನು ರಚಿಸಬಹುದು ಅಥವಾ ವಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ನಿರಸನಗೊಳಿಸಬಹುದು.

**38. ಶುಲ್ಕ ನಿಯಂತ್ರಣ ಸಮಿತಿ.–**(1) ಸರ್ಕಾರವು ರಚಿಸಿದ ನಿವೃತ್ತ ಸರ್ವೋಚ್ಚ ನ್ಯಾಯಾಲಯದ ಅಥವಾ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು ಮುಖ್ಯಸ್ಥರಾಗಿರುವ ಮತ್ತು ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ, ಉನ್ನತ ಶಿಕ್ಷಣ ಪ್ರಭಾರದಲ್ಲಿರುವ ಸರ್ಕಾರದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು, ವೈದ್ಯಕೀಯ ಶಿಕ್ಷಣದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು, ಒಬ್ಬ ಮಹಿಳೆಯೂ ಸೇರಿದಂತೆ ಪ್ರಬಂಧಕ ಮಂಡಳಿಯು ನಾಮನಿರ್ದೇಶಿಸಿದ ಇಬ್ಬರು ಶಿಕ್ಷಣ ತಜ್ಞರು ಇವರುಗಳನ್ನು ಒಳಗೊಂಡ ಒಂದು ಶುಲ್ಕ ನಿಯಂತ್ರಣ ಸಮಿತಿಯು, 9ನೇ ಪ್ರಕರಣದ ಅಡಿಯಲ್ಲಿ ಕರ್ನಾಟಕದ ವಿದ್ಯಾರ್ಥಿಗಳಿಗಾಗಿ ಮೀಸಲಿರಿಸಿದ ವಿಶ್ವವಿದ್ಯಾಲಯದ ಸ್ಥಾನಗಳ ಶುಲ್ಕವನ್ನು ನಿಯಂತ್ರಿಸತಕ್ಕದ್ದು. ಸಮಿತಿಯಲ್ಲಿ ಈ ಉದ್ದೇಶಕ್ಕಾಗಿ ಒಬ್ಬರು ಖ್ಯಾತ ಚಾರ್ಟರ್ಡ್ ಅಕೌಂಟೆಂಟ್ ರವರನ್ನು ಸಹ ಸದಸ್ಯನನ್ನಾಗಿ ಸೇರಿಸಿಕೊಳ್ಳತಕ್ಕದ್ದು.

(2) ಸಮಿತಿಯು, ವಿಶ್ವವಿದ್ಯಾಲಯದ ಪ್ರವೇಶಗಳ ಮತ್ತು ಶುಲ್ಕದ ಸಂಗ್ರಹಣೆಯ ಅನುಪಾಲನೆಯನ್ನು ನೋಡಿಕೊಳ್ಳತಕ್ಕದ್ದು.

## ಅಧ್ಯಾಯ - VI

## ಸಂಕೀರ್ಣ

**39. ನೌಕರರ ಸೇವಾ ಷರತ್ತುಗಳು.–** (1) ಪರಿನಿಯಮಗಳ ಮತ್ತು ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಥವಾ ನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳು, ಯಾವುದಾದರೂ ಇದ್ದಲ್ಲಿ, ಅವುಗಳಿಗೆ ಒಳಪಟ್ಟು ಪ್ರತಿಯೊಬ್ಬ ನೌಕರನು ಲಿಖಿತ ಕರಾರಿನ ಅಡಿಯಲ್ಲಿ ನೇಮಕಗೊಳ್ಳತಕ್ಕದ್ದು ಮತ್ತು ಅದನ್ನು ವಿಶ್ವವಿದ್ಯಾಲಯದಲ್ಲಿ ಇಟ್ಟುಕೊಳ್ಳತಕ್ಕದ್ದು ಹಾಗೂ ಅದರ ಪ್ರತಿಯನ್ನು ಸಂಬಂಧಪಟ್ಟ ನೌಕರನಿಗೆ ನೀಡತಕ್ಕದ್ದು.

(2) ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಕಾರ್ಯವಿಧಾನಗಳ ಮೂಲಕ ನಿಯಂತ್ರಿಸತಕ್ಕದ್ದು.

(3) ಕರಾರಿನಿಂದಾಗಿ ವಿಶ್ವವಿದ್ಯಾಲಯ ಮತ್ತು ನೌಕರನ ಮಧ್ಯದಲ್ಲಿ ಉದ್ಭವಿಸಬಹುದಾದ ಯಾವುದೇ ವಿವಾದವನ್ನು, ಲಿಖಿತ ಕರಾರಿನಲ್ಲಿ ಉಪಬಂಧಿಸಿದ ವಿಧಾನದಲ್ಲಿ ಹಾಗೂ ಪರಿನಿಯಮಗಳ ಅನುಸಾರವಾಗಿ ಪರಿಹರಿಸತಕ್ಕದ್ದು.

**40. ಮೇಲ್ಮನವಿ ಹಕ್ಕು.–** ವಿಶ್ವವಿದ್ಯಾಲಯವು ತನ್ನ ನೌಕರರ ಅಥವಾ ವಿದ್ಯಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡ ಸಂದರ್ಭದಲ್ಲಿ, ಬಾಧಿತ ನೌಕರ ಅಥವಾ ವಿದ್ಯಾರ್ಥಿಗಳು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಅಂಥ ಪ್ರಾಧಿಕಾರಕ್ಕೆ ಮೇಲ್ಮನವಿಯನ್ನು ಸಲ್ಲಿಸುವ ಹಕ್ಕನ್ನು ಹೊಂದಿರತಕ್ಕದ್ದು.

**41. ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿ .–** ವಿಶ್ವವಿದ್ಯಾಲಯವು, ತನ್ನ ನೌಕರರ ಪ್ರಯೋಜನಕ್ಕಾಗಿ, ಪರಿನಿಯಮಗಳು ಮತ್ತು ಜಾರಿಯಲ್ಲಿರುವ ಕಾನೂನುಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿಯನ್ನು ರಚಿಸತಕ್ಕದ್ದು ಹಾಗೂ ಅಂಥ ವಿಮಾ ಯೋಜನೆಗಳನ್ನು ಒದಗಿಸತಕ್ಕದ್ದು.

**42. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಅಥವಾ ಇತರ ಸಂಸ್ಥೆಯ ಸದಸ್ಯನಾಗಿ ಯಾವೊಬ್ಬ ವ್ಯಕ್ತಿಯು ಸೂಕ್ತವಾಗಿ ಆಯ್ಕೆಯಾಗಿದ್ದಾನೆಯೇ ಅಥವಾ ನೇಮಕಗೊಂಡಿದ್ದಾನೆಯೇ ಅಥವಾ ಅದಕ್ಕೆ ಅರ್ಹನಾಗಿದ್ದಾನೆಯೇ ಎಂಬ ಯಾವುದೇ ಪ್ರಶ್ನೆ ಉದ್ಭವಿಸಿದರೆ, ಆ ವಿಷಯವನ್ನು ತೀರ್ಮಾನಕ್ಕಾಗಿ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**43. ಸಮಿತಿಗಳ ರಚನೆ.–** 22ನೇ ಪ್ರಕರಣದಲ್ಲಿ ನಮೂದಿಸಿದ ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಅಧಿಕಾರವನ್ನು ಹೊಂದಿರುವ ಅಂಥ ಸದಸ್ಯರನ್ನು ಒಳಗೊಂಡ ಅಂಥ ಪ್ರಾಧಿಕಾರದ ಒಂದು ಸಮಿತಿಯನ್ನು ರಚಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**44. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಂಸ್ಥೆಯ ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ಪೈಕಿ ಯಾವುದೇ ಸ್ಥಾನವು ಆಕಸ್ಮಿಕವಾಗಿ ಖಾಲಿಯಾದರೆ ಯಾರ ಸ್ಥಾನವು ಖಾಲಿಯಾಗಿ ತುಂಬಬೇಕಾಗಿ ಬಂದಿದೆಯೋ ಆ ಸದಸ್ಯನನ್ನು ಯಾವ ರೀತಿಯಲ್ಲಿ ಆರಿಸಲಾಗಿತ್ತೋ ಅದೇ ರೀತಿಯಲ್ಲಿ ಹೊಸ ಸದಸ್ಯನನ್ನು ಆರಿಸಿ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ಖಾಲಿ ಸ್ಥಾನವನ್ನು ಭರ್ತಿ ಮಾಡಿದ ವ್ಯಕ್ತಿಯು ಆತನು ಯಾವ ಸದಸ್ಯನ ಸ್ಥಾನದಲ್ಲಿ ಭರ್ತಿಯಾಗಿರುವನೋ ಆ ಸದಸ್ಯನು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯನಾಗಿ ಉಳಿಯುತ್ತಿದ್ದ ಬಾಕಿ ಅವಧಿಯವರೆಗೆ ಮಾತ್ರ ಸದಸ್ಯನಾಗಿರತಕ್ಕದ್ದು.

**45. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.–** ಈ ಅಧಿನಿಯಮ ಅಥವಾ ಪರಿನಿಯಮಗಳು ಅಥವಾ ನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ವಿಶ್ವವಿದ್ಯಾಲಯದ ಯಾವೊಬ್ಬ ಅಧಿಕಾರಿ ಅಥವಾ ಇತರ ನೌಕರರ ವಿರುದ್ಧ ಯಾವುದೇ ದಾವೆ ಅಥವಾ ಇತರ ಕಾನೂನು ವ್ಯವಹರಣೆಗಳನ್ನು ನಡೆಸಲು ಅವಕಾಶ ಇರತಕ್ಕದ್ದಲ್ಲ.

**46. ತಾತ್ಕಾಲಿಕ ಉಪಬಂಧಗಳು.–** ಈ ಅಧಿನಿಯಮ ಮತ್ತು ಪರಿನಿಯಮಗಳ ಯಾವುದೇ ಇತರ ಉಪಬಂಧಗಳಲ್ಲಿ ಏನೇ ಇದ್ದರೂ,–

(i) ಮೊದಲ ಕುಲಪತಿ ಮತ್ತು ಸಹಕುಲಪತಿ, ಯಾರಾದರೂ ಇದ್ದರೆ, ಅವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(ii) ಮೊದಲ ಕುಲಸಚಿವರನ್ನು, ಮೊದಲ ಕುಲಸಚಿವರು ಮೌಲ್ಯಮಾಪನ ಮತ್ತು ಮೊದಲ ಹಣಕಾಸು ಅಧಿಕಾರಿಯವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು; ಮತ್ತು

(iii) ಮೊದಲ ವ್ಯವಸ್ಥಾಪನ ಮಂಡಳಿ, ಮೊದಲ ಹಣಕಾಸು ಸಮಿತಿ, ಮೊದಲ ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಹಾಗೂ ಮೊದಲ ಶೈಕ್ಷಣಿಕ ಪರಿಷತ್ತನ್ನು ಕುಲಾಧಿಪತಿಯವರು ರಚಿಸತಕ್ಕದ್ದು.

**47. ಶಾಶ್ವತ ಶಾಸನಬದ್ಧ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಕನಿಷ್ಠ ಇಪ್ಪತ್ತೈದು ಕೋಟಿ ರೂಪಾಯಿಗಳನ್ನುಳ್ಳ ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು ಈ ಪೈಕಿ ಕನಿಷ್ಠ ಹದಿನೈದು ಕೋಟಿ ರೂಪಾಯಿಗಳು ನಗದು ರೂಪದಲ್ಲಿ ಮತ್ತು ಇನ್ನೂಳಿದದ್ದು ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ಇರತಕ್ಕದ್ದು ಮತ್ತು ಇದನ್ನು ತಾನಾಗಿಯೇ ಹೆಚ್ಚಿಸಬಹುದಾಗಿದ್ದು ಆದರೆ ಅದಕ್ಕಿಂತ ಕಡಿಮೆ ಮಾಡತಕ್ಕದ್ದಲ್ಲ :

ಪರಂತು, ಬೆಂಗಳೂರು ಅಥವಾ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊರಗಿರುವ ವಿಶ್ವವಿದ್ಯಾಲಯದ ಸಂದರ್ಭದಲ್ಲಿ ಕನಿಷ್ಠ ಹತ್ತು ಕೋಟಿ ರೂಪಾಯಿಗಳು ನಗದು ರೂಪದಲ್ಲಿರತಕ್ಕದ್ದು ಮತ್ತು ಉಳಿದ ಐದು ಕೋಟಿ ರೂಪಾಯಿಗಳು ಬ್ಯಾಂಕ್ ಗ್ಯಾರಂಟಿಯ ರೂಪದಲ್ಲಿರತಕ್ಕದ್ದು.

(2) ವಿಶ್ವವಿದ್ಯಾಲಯವು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಹಣವನ್ನು ಹೂಡಲು ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯವು ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಗೆ ವರ್ಗಾವಣೆ ಮಾಡಬಹುದು. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನೂ ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(4) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಿದ ವರಮಾನದ ಶೇಕಡಾ ಎಪ್ಪತ್ತೈದರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತೈದರಷ್ಟನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಯಲ್ಲಿ ಪುನ: ತೊಡಗಿಸತಕ್ಕದ್ದು.

**48. ವಿಶ್ವವಿದ್ಯಾಲಯದ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ದೇಣಿಗೆಗಳು ಮತ್ತು ಕಾಲಕಾಲಕ್ಕೆ ಸ್ವೀಕರಿಸಲಾದ ಇತರ ನಿಧಿಯನ್ನು ಒಳಗೊಂಡ ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದ ಅಂಥ ನಿಧಿಯನ್ನು ಹೊಂದಿರುವ ಒಂದು ವಿಶ್ವವಿದ್ಯಾಲಯ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು.

(2) ವಿಶ್ವವಿದ್ಯಾಲಯವು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ವಿಶ್ವವಿದ್ಯಾಲಯದ ದತ್ತಿನಿಧಿಯನ್ನು ಹೂಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯ ದತ್ತಿ ನಿಧಿಯು, ವಿಶ್ವವಿದ್ಯಾಲಯವು ತನ್ನ ಸಾಮಾಜಿಕ ಧ್ಯೇಯೋದ್ದೇಶಗಳನ್ನು ನೆರವೇರಿಸುವ ಸಂದರ್ಭದಲ್ಲಿ ಮತ್ತು/ಅಥವಾ ಮುಂಗಾಣದ ಸನ್ನಿವೇಶದಲ್ಲಿ ಉದ್ಭವಿಸಬಹುದಾದ ಹಣಕಾಸು ಸವಾಲುಗಳಿಂದ ತನ್ನನ್ನು

ಿಸಿಕೊಳ್ಳುವುದಕ್ಕಾಗಿ, ಸ್ವಇಚ್ಛೆಯಿಂದ ನಿರ್ವಹಿಸಿಕೊಂಡು ಬರಲು ಮತ್ತು ಜವಾಬ್ದಾರಿಯಿಂದ ಹಣ ಹೂಡಿಕೆ ಮಾಡಲು ಇಚ್ಛೆಯುಳ್ಳವರಾಗಿ ಸ್ವಯಂ ವಿಧಿಸಿಕೊಂಡ ನಿಧಿಯಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಗೆ ವರ್ಗಾಯಿಸಬಹುದು. ವಿಶ್ವವಿದ್ಯಾಲಯದ ಸಮಾಪನಗೊಳಿಸುವದನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನು ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(5) ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಬರುವ ವರಮಾನದ ಶೇಕಡಾ ಎಂಭತ್ತರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸದ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತರಷ್ಟನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**49. ಸಾಮಾನ್ಯ ನಿಧಿ.**– (1) ವಿಶ್ವವಿದ್ಯಾಲಯವು, ಒಂದು ಸಾಮಾನ್ಯ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯವು ವಿಧಿಸಬಹುದಾದ ಎಲ್ಲಾ ಶುಲ್ಕಗಳು;

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೆ ಇರುವ ಯಾವುದೇ ಇತರ ಮೂಲದಿಂದ ಸ್ವೀಕರಿಸಲಾದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ದೇಣಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು / ವಂತಿಗೆಗಳು;

(2) ಸಾಮಾನ್ಯ ನಿಧಿಗೆ ಜಮಾ ಮಾಡುವ ನಿಧಿಗಳನ್ನು ವಿಶ್ವವಿದ್ಯಾಲಯದ ಎಲ್ಲಾ ಆವರ್ತಕ ವೆಚ್ಚಗಳನ್ನು ಭರಿಸಲು ಉಪಯೋಗಿಸಿಕೊಳ್ಳತಕ್ಕದ್ದು.

**50. ಅಭಿವೃದ್ಧಿ ನಿಧಿ.**– (1) ವಿಶ್ವವಿದ್ಯಾಲಯವು, ಒಂದು ಅಭಿವೃದ್ಧಿ ನಿಧಿಯನ್ನು ಸಹ ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗು.ಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಅಭಿವೃದ್ಧಿ ಶುಲ್ಕಗಳು;

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ವಿಶ್ವವಿದ್ಯಾಲಯದ ಅಭಿವೃದ್ಧಿಯ ಉದ್ದೇಶಗಳಿಗಾಗಿ ಯಾವುದೇ ಇತರ ಮೂಲಗಳಿಂದ ಸ್ವೀಕರಿಸಿದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ವಂತಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು / ವಂತಿಗೆಗಳು; ಮತ್ತು

(v) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಲಾದ ಎಲ್ಲಾ ವರಮಾನಗಳು.

(2) ಅಭಿವೃದ್ಧಿ ನಿಧಿಗೆ ಕಾಲಕಾಲಕ್ಕೆ ಜಮಾ ಮಾಡಿದ ನಿಧಿಯನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಉಪಯೋಗಿಸಿಕೊಳ್ಳತಕ್ಕದ್ದು.

**51. ನಿಧಿಗಳ ನಿರ್ವಹಣೆ.**– 47, 48, 49 ಮತ್ತು 50ನೇ ಪ್ರಕರಣಗಳಡಿಯಲ್ಲಿ ಸ್ಥಾಪಿಸಲಾದ ನಿಧಿಗಳನ್ನು ಪ್ರಬಂಧಕ ಮಂಡಳಿಯ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ನಿಯಂತ್ರಿಸತಕ್ಕದ್ದು ಹಾಗೂ ನಿರ್ವಹಿಸತಕ್ಕದ್ದು.

**52. ವಾರ್ಷಿಕ ವರದಿ.**– (1) ವಿಶ್ವವಿದ್ಯಾಲಯದ ವಾರ್ಷಿಕ ವರದಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ಅದರ ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಪ್ರಬಂಧಕ ಮಂಡಳಿಯು ವಾರ್ಷಿಕ ವರದಿಯನ್ನು ತನ್ನ ಸಭೆಯಲ್ಲಿ ಪರಿಗಣಿಸತಕ್ಕದ್ದು ಹಾಗೂ ಅದನ್ನು ಮಾರ್ಪಾಡುಗಳೊಡನೆ ಅಥವಾ ಮಾರ್ಪಾಡುಗಳಿಲ್ಲದೆ ಅನುಮೋದಿಸಬಹುದು.

(3) ಪ್ರಬಂಧಕ ಮಂಡಳಿಯು ಸೂಕ್ತವಾಗಿ ಅನುಮೋದಿಸಿದ ವಾರ್ಷಿಕ ವರದಿಯ ಒಂದು ಪ್ರತಿಯನ್ನು ಪ್ರತಿವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ಡಿಸೆಂಬರ್ 31ಕ್ಕೆ ಮೊದಲು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**53. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.–** (1) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕ ಪತ್ರ ಮತ್ತು ಜಮಾ ಖರ್ಚು ಪಟ್ಟಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯಕ್ಕೆ ಎಲ್ಲಾ ಮೂಲಗಳಿಂದ ಪ್ರಾಪ್ತವಾಗುವ ಅಥವಾ ಸ್ವೀಕರಿಸಲಾಗುವ ಎಲ್ಲಾ ನಿಧಿಗಳು ಹಾಗೂ ವಿತರಿಸಿದ ಅಥವಾ ಸಂದಾಯ ಮಾಡಿದ ಎಲ್ಲಾ ಮೊಬಲಗುಗಳನ್ನು ವಿಶ್ವವಿದ್ಯಾಲಯವು ನಿರ್ವಹಿಸುವ ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕಪತ್ರಗಳನ್ನು ಪ್ರತಿ ವರ್ಷವೂ ಭಾರತದ ಚಾರ್ಟೆಡ್ ಅಕೌಂಟೆಂಟ್‌ಗಳ ಸಂಸ್ಥೆಯ ಸದಸ್ಯರಾಗಿರುವ ಒಬ್ಬ ಲೆಕ್ಕಪರಿಶೋಧಕರಿಂದ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಲೆಕ್ಕಪರಿಶೋಧನಾ ವರದಿಯೊಡನೆ, ಪ್ರತಿ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ನವೆಂಬರ್ 30ಕ್ಕೆ ಮೊದಲು ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(4) ವಾರ್ಷಿಕ ಲೆಕ್ಕಪತ್ರಗಳು, ಜಮಾಖರ್ಚು ಪಟ್ಟಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಪ್ರಬಂಧಕ ಮಂಡಳಿಯು ತನ್ನ ಸಭೆಯಲ್ಲಿ ಪರ್ಯಾಲೋಚಿಸತಕ್ಕದ್ದು ಮತ್ತು ಪ್ರಬಂಧಕ ಮಂಡಳಿಯು ಅದನ್ನು ತನ್ನ ಅಭಿಪ್ರಾಯಗಳೊಡನೆ ಸಂದರ್ಶಕರಿಗೆ ಹಾಗೂ ಸರ್ಕಾರಕ್ಕೆ ಪ್ರತಿ ವರ್ಷದ ಡಿಸೆಂಬರ್ 31 ರಂದು ಅಥವಾ ಅದಕ್ಕೆ ಮೊದಲು ಕಳುಹಿಸತಕ್ಕದ್ದು.

(5) ಲೆಕ್ಕಪರಿಶೋಧಕರ ವರದಿಯಲ್ಲಿ ಯಾವುದೇ ಮುಖ್ಯ ಬದಲಾವಣೆ ಇದ್ದ ಸಂದರ್ಭದಲ್ಲಿ, ರಾಜ್ಯ ಸರ್ಕಾರವು ವಿಶ್ವವಿದ್ಯಾಲಯಕ್ಕೆ ನಿರ್ದೇಶನಗಳನ್ನು ಹೊರಡಿಬಹುದು ಮತ್ತು ಅಂಥ ನಿರ್ದೇಶನಗಳು ವಿಶ್ವವಿದ್ಯಾಲಯದ ಮೇಲೆ ಬಂಧನಕಾರಿಯಾಗಿರತಕ್ಕದ್ದು.

**54. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಮಿತಿಯ ಯಾವುದೇ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ ಅಥವಾ ಗೊತ್ತುವಳಿಯು ಅಥವಾ ವಿಶ್ವವಿದ್ಯಾಲಯದ ಸ್ವಾಧೀನದಲ್ಲಿರುವ ಇತರ ದಾಖಲೆಗಳು ಅಥವಾ ವಿಶ್ವವಿದ್ಯಾಲಯವು ಯುಕ್ತವಾಗಿ ನಿರ್ವಹಿಸುವ ಯಾವುದೇ ರಿಜಿಸ್ಟರ್‌ನಲ್ಲಿಯ ಯಾವುದೇ ನಮೂದುಗಳ ಪ್ರತಿಯನ್ನು, ಅದರ ಮೇಲೆ ಕುಲಸಚಿವರು ಪ್ರಮಾಣೀಕರಿಸಿದ್ದರೆ, ಅದನ್ನು ಅಂಥ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ, ಗೊತ್ತುವಳಿ ಅಥವಾ ದಾಖಲೆ ಅಥವಾ ರಿಜಿಸ್ಟರ್‌ನಲ್ಲಿ ಇರುವ ನಮೂದನ್ನು ಮೇಲ್ನೋಟದ ಸಾಕ್ಷ್ಯವೆಂಬುದಾಗಿ ಸ್ವೀಕರಿಸತಕ್ಕದ್ದು ಮತ್ತು ವಿಷಯಗಳ ಸಾಕ್ಷಿಯಾಗಿ ಅಂಗೀಕರಿಸತಕ್ಕದ್ದು ಹಾಗೂ ಮೂಲ ದಾಖಲೆಗಳನ್ನೇ ಸಲ್ಲಿಸಿದ್ದರೆ ಅದನ್ನು, ದಾಖಲಿಸಿರುವ ವಿಷಯಗಳು ಮತ್ತು ವಹಿವಾಟುಗಳ ಸಾಕ್ಷ್ಯವಾಗಿ ಅಂಗೀಕರಿಸಲಾಗುತ್ತಿತ್ತೋ, ಅದೇ ರೀತಿಯಲ್ಲಿ ಇವನ್ನೂ ಸಾಕ್ಷ್ಯವಾಗಿ ಅಂಗೀಕರಿಸತಕ್ಕದ್ದು.

**55. ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ.–** ರಾಜ್ಯಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಥವಾ ಅದರಲ್ಲಿ ಇರುವ ಯಾವುವೇ ಉಪಬಂಧಗಳನ್ನು ಅಥವಾ ಅದರಡಿಯಲ್ಲಿ ರಚಿಸಿದ ಯಾವುವೇ ನಿಯಮಗಳು ಅಥವಾ ಆದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿರ್ದೇಶನ ನೀಡುವುದು ಅವಶ್ಯವೆಂದು ಅಥವಾ ಉಚಿತವೆಂದು ಅಭಿಪ್ರಾಯಪಟ್ಟಲ್ಲಿ ಅದು ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ ಅಥವಾ ಸಂದರ್ಭಾನುಸಾರವಾಗಿ ವ್ಯವಸ್ಥಾಪನಾ ಮಂಡಳಿಯು ಅಂಥ ಪ್ರತಿಯೊಂದು ನಿರ್ದೇಶನವನ್ನು ಪಾಲಿಸತಕ್ಕದ್ದು.

**56. ದಂಡಗಳು.–** (1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿತವಾದ ನಿಯಮಗಳ ಉಪಬಂಧಗಳನ್ನು ಅಥವಾ ಯಾವುದೇ ಪರೀಕ್ಷಾ ವಿಷಯಗಳನ್ನು ಅಥವಾ ಪದವಿಗಳನ್ನು ನೀಡುವುದಕ್ಕೆ ಅಥವಾ ಅಂಕಪಟ್ಟಿಗಳನ್ನು ನೀಡುವುದಕ್ಕೆ ಸಂಬಂಧಪಟ್ಟ ವಿಷಯಗಳಲ್ಲಿ ಉಲ್ಲಂಘನೆಗಳನ್ನು ಮಾಡುವ ಯಾವೊಬ್ಬ ವ್ಯಕ್ತಿಯು, ಅಪರಾಧ ನಿರ್ಣಯವಾದ ಮೇಲೆ, ಐವತ್ತು ಸಾವಿರ ರೂಪಾಯಿಗಳಿಗೆ ಕಡಿಮೆಯಲ್ಲದ ಆದರೆ ಹತ್ತು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಆರುತಿಂಗಳ ಅವಧಿಗಿಂತ ಕಡಿಮೆಯಲ್ಲದ ಆದರೆ ಎರಡು ವರ್ಷಗಳ ಅವಧಿಯವರೆಗೆ ವಿಸ್ತರಿಸಬಹುದಾದ ಕಾರಾವಾಸದಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು:

ಪರಂತು, ವಿಶ್ವವಿದ್ಯಾಲಯವೂ ಸಹ ಒಳಗೊಂಡಿರುವಲ್ಲಿ, ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಈ ಅಧಿನಿಯಮದ ಅಡಿಯಲ್ಲಿ ನೀಡಲಾದ ಅನುಮತಿ ಪತ್ರವನ್ನು ಹಿಂತೆಗೆದುಕೊಳ್ಳತಕ್ಕದ್ದು.

(2) ಈ ಪ್ರಕರಣದ ಅಡಿಯಲ್ಲಿಯ ದಂಡವನ್ನು ಇತರ ಯಾವುದೇ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಲಾದ ದಂಡಕ್ಕೆ ಬಾಧಕವಾಗದಂತೆ ವಿಧಿಸಬಹುದು.

**57. ಪ್ರವೇಶಿಸುವ ಮತ್ತು ಪರಿಶೋಧಿಸುವ ಅಧಿಕಾರ.–** ಈ ಉದ್ದೇಶಕ್ಕಾಗಿ, ರಾಜ್ಯಸರ್ಕಾರದಿಂದ ಪ್ರಾಧಿಕೃತಗೊಂಡ 'ಎ' ಸಮೂಹದ ಅಧಿಕಾರಿ ದರ್ಜೆಗಿಂತ ಕಡಿಮೆ ಇಲ್ಲದ ದರ್ಜೆಯ ಯಾವೊಬ್ಬ ಅಧಿಕಾರಿಯು, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಶನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ 37) ಅಡಿಯಲ್ಲಿ ನಿರ್ದಿಷ್ಟಪಡಿಸಿರಬಹುದಾದ ಅಂಥ ಷರತ್ತುಗಳಿಗೆ ಒಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ, ಆ ಅಧಿನಿಯಮದ 9ನೇ ಪ್ರಕರಣದ ಅಡಿಯಲ್ಲಿ ಉಪಬಂಧಿಸಲಾದಂತಹವೇ ಅಧಿಕಾರಗಳನ್ನು ಚಲಾಯಿಸಲು ಮತ್ತು ಪ್ರಕಾರ್ಯಗಳನ್ನು ನೆರವೇರಿಸಲು ಅಧಿಕೃತನಾದ ಅಧಿಕಾರಿ ಎಂಬುದಾಗಿ ಭಾವಿಸತಕ್ಕದ್ದು.

**58. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ನಿರ್ದೇಶನವನ್ನು ನೀಡುವ ಅಧಿಕಾರ.–** (1) ವಿಶ್ವವಿದ್ಯಾಲಯವು ತನ್ನ ರಚನೆ ಅಥವಾ ನಿಗಮನವನ್ನು ನಿಯಂತ್ರಿಸುವ ಕಾನೂನಿಗೆ ಅನುಸಾರವಾಗಿ ತನ್ನ ಸಮಾಪನವನ್ನು ಉದ್ದೇಶಿಸಿದ್ದಲ್ಲಿ, ಅದು ಕನಿಷ್ಠ ಆರು ತಿಂಗಳ ಲಿಖಿತ ಪೂರ್ವ ಸೂಚನೆಯನ್ನು (ನೋಟೀಸು) ಸರ್ಕಾರಕ್ಕೆ ನೀಡತಕ್ಕದ್ದು.

(2) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಈ ಕೆಳಗಿನವುಗಳ ಬಗ್ಗೆ, ಎಂದರೆ:–

(i) ಪದವಿಯನ್ನು ನೀಡುವುದಕ್ಕಾಗಿ ಬೋಧನೆಯ ಗುಣಮಟ್ಟ;

(ii) ಶಿಕ್ಷಣದ ಗುಣಮಟ್ಟ;

(iii) ಉನ್ನತ ಶಿಕ್ಷಣದ ವ್ಯಾಪಾರೀಕರಣವನ್ನು ತಡೆಗಟ್ಟುವುದು;

(iv) ಅಧಿನಿಯಮದ ಉಪಬಂಧಗಳ ಉಲ್ಲಂಘನೆಯ ಬಗ್ಗೆ, ಯಾವುದಾದರೂ ಇದ್ದಲ್ಲಿ,

– ಇವುಗಳ ಬಗ್ಗೆ ನಿಯತಕಾಲಿಕ ಪರಿವೀಕ್ಷಣೆಯನ್ನು ನಡೆಸತಕ್ಕದ್ದು ಮತ್ತು ಸರ್ಕಾರಕ್ಕೆ ವರದಿಯನ್ನು ಕಳುಹಿಸತಕ್ಕದ್ದು.

(3) ದುರ್ವ್ಯವಹರಣೆ, ದುರಾಡಳಿತ ಮತ್ತು ಅಶಿಸ್ತು ಆಗಿದೆ ಎಂಬುದನ್ನು ಗುರುತಿಸಿದರೆ, ಸರ್ಕಾರವು, ವಿಶ್ವವಿದ್ಯಾಲಯದ ಆಡಳಿತ ವರ್ಗದವರಿಗೆ ಆಡಳಿತವನ್ನು ಸರಿಪಡಿಸಬೇಕೆಂದು ನಿರ್ದೇಶನಗಳನ್ನು ನೀಡತಕ್ಕದ್ದು. ನಿಯಮಿಸಬಹುದಾದ ಅಂಥ ಅವಧಿಯೊಳಗೆ ಆ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುವ ಹಕ್ಕು ಸರ್ಕಾರದಲ್ಲಿ ನಿಹಿತವಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ವಿಧಾನವು, ಸರ್ಕಾರವು ಈ ಸಂಬಂಧದಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು:

ಪರಂತು, ವಿಶ್ವವಿದ್ಯಾಲಯವು ತನ್ನ ಕಾರಣಗಳನ್ನು ಹೇಳಿಕೊಳ್ಳಲು ಸಮಂಜಸ ಅವಕಾಶಗಳನ್ನು ನೀಡಿದ ಹೊರತು ಅಂಥ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

(5) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೋಟೀಸನ್ನು ಸ್ವೀಕರಿಸಿದ ಮೇಲೆ, ಸರ್ಕಾರವು ಸಂಬಂಧಿಸಿದ ನಿಯಂತ್ರಣಾ ಪ್ರಾಧಿಕಾರದೊಡನೆ ಸಮಾಲೋಚಿಸಿ, ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ಅಥವಾ ವ್ಯಾಸಂಗ ಕ್ರಮವನ್ನು ಪರಿಸಮಾಪನಗೊಳಿಸಲು ಉದ್ದೇಶಿಸಿದ ದಿನಾಂಕದಿಂದ, ವಿಶ್ವವಿದ್ಯಾಲಯದಲ್ಲಿ ನಿಯತ ವ್ಯಾಸಂಗ ಕ್ರಮಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕೊನೆಯ ತಂಡ (ಬ್ಯಾಚ್) ತನ್ನ ವ್ಯಾಸಂಗ ಕ್ರಮವನ್ನು ಮುಗಿಸುವವರೆಗೆ ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು.

**59. ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು.–** (1) 58ನೇ ಪ್ರಕರಣದ (5)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ಅದರ ಆಡಳಿತಾತ್ಮಕ ವೆಚ್ಚಗಳನ್ನು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿ, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಭರಿಸತಕ್ಕದ್ದು.

(2) ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ವಿಶ್ವವಿದ್ಯಾಲಯದ ವೆಚ್ಚವನ್ನು ಭರಿಸಲು 47, 48, 49 ಮತ್ತು 50ನೇ ಪ್ರಕರಣಗಳ ಅಡಿಯಲ್ಲಿ ಉಲ್ಲೇಖಿಸಲಾದ ನಿಧಿಯು ಸಾಕಷ್ಟು ಇಲ್ಲದಿದ್ದಲ್ಲಿ, ಅಂಥ ವೆಚ್ಚವನ್ನು ಸರ್ಕಾರವು, ವಿಶ್ವವಿದ್ಯಾಲಯದ ಸ್ವತ್ತುಗಳು ಮತ್ತು ಆಸ್ತಿಗಳನ್ನು ವಿಲೇ ಮಾಡುವ ಮೂಲಕ ಭರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಸಮಾಪನೆಯು ದುರ್ವ್ಯವಹರಣೆ ಅಥವಾ ದುರಾಡಳಿತದ ಕಾರಣಗಳಿಗಾಗಿ ಆಗಿದ್ದರೆ, ಸರ್ಕಾರವು ಅಂಥ ದುರ್ವ್ಯವಹಾರಕ್ಕೆ ಅಥವಾ ದುರಾಡಳಿತಕ್ಕೆ ಹೊಣೆಯಾಗಿರುವ ವ್ಯಕ್ತಿಗಳನ್ನು ಗುರುತಿಸುವ ಮತ್ತು ಅವ ಮೇಲೆ ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ದಂಡನೆಯನ್ನು ವಿಧಿಸಲು ಸ್ವತಂತ್ರವಾಗಿರತಕ್ಕದ್ದು.

**60. ತೊಂದರೆಗಳ ನಿವಾರಣೆಗೆ ಅಧಿಕಾರ.–** (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಅಥವಾ ಆದೇಶದ ಮೂಲಕ ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಐದು ವರ್ಷಗಳು ಮುಕ್ತಾಯವಾದ ತರುವಾಯ ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಅಧಿಸೂಚನೆ ಅಥವಾ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

**61. ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ.–** (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ಹೊರಡಿಸಲಾದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಉಭಯ ಸದನಗಳು ಒಪ್ಪಿದರೆ ತದನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ದತಿಯು ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವನ್ನು ಉಂಟುಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಜಿ.ಕೆ.ಬೋರೇಗೌಡ**

ಸರ್ಕಾರದ ಕಾರ್ಯದರ್ಶಿ

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) (೮೦೦ ಪ್ರತಿಗಳು)

# 2010ರ ಕರ್ನಾಟಕ ಅಧಿನಿಯಮ ಸಂಖ್ಯೆ 34

# ಅಲಿಯನ್ಸ್ ವಿಶ್ವವಿದ್ಯಾಲಯ ಅಧಿನಿಯಮ, 2010

## ಪ್ರಕರಣಗಳ ಪಟ್ಟಿ

ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ:

ಪ್ರಕರಣಗಳು:

ಅಧ್ಯಾಯ – I

ಪ್ರಾರಂಭಿಕ

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ
2. ಪರಿಭಾಷೆಗಳು

ಅಧ್ಯಾಯ – II

ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

3. ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ
4. ವಿಶ್ವವಿದ್ಯಾಲಯದ ಸ್ಥಾಪನೆ
5. ಅನುದಾನಗಳು ಮತ್ತು ಹಣಕಾಸು ನೆರವು
6. ಘಟಕ ಕಾಲೇಜನ್ನು ಸ್ಥಾಪಿಸುವುದಕ್ಕೆ ಅಧಿಕಾರ
7. ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು
8. ವಿಶ್ವವಿದ್ಯಾಲಯದ ಅಧಿಕಾರಗಳು
9. ವಿಶ್ವವಿದ್ಯಾಲಯವು ಎಲ್ಲಾ ವರ್ಗಗಳು, ಜಾತಿಗಳು, ಪಂಥ ಮತ್ತು ಲಿಂಗಭೇದವಿಲ್ಲದೆ ಎಲ್ಲರಿಗೂ ಮುಕ್ತವಾಗಿರತಕ್ಕದ್ದು
10. ರಾಷ್ಟ್ರೀಯ ಅಧಿಮಾನ್ಯತೆ
11. ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು

ಅಧ್ಯಾಯ – III

ವಿಶ್ವವಿದ್ಯಾಲಯದ ಅಧಿಕಾರಿಗಳು

12. ವಿಶ್ವವಿದ್ಯಾಲಯದ ಅಧಿಕಾರಿಗಳು
13. ಸಂದರ್ಶಕರು
14. ಸಹ ಸಂದರ್ಶಕರು
15. ಕುಲಾಧಿಪತಿ
16. ಕುಲಪತಿ
17. ಸಹಕುಲಪತಿ
18. ವಿದ್ಯಾ ವಿಭಾಗಗಳ ಡೀನ್‌ಗಳು
19. ಕುಲಸಚಿವರು
20. ಹಣಕಾಸು ಅಧಿಕಾರಿ
21. ಇತರ ಅಧಿಕಾರಿಗಳು

ಅಧ್ಯಾಯ – IV

ವಿಶ್ವವಿದ್ಯಾಲಯದ ಪ್ರಾಧಿಕಾರಗಳು

22. ವಿಶ್ವವಿದ್ಯಾಲಯದ ಪ್ರಾಧಿಕಾರಗಳು
23. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು
24. ಆಡಳಿತ ಮಂಡಳಿ

25. ಪ್ರಶಿಕ್ಷಣ ಪರಿಷತ್ತು
26. ಸಂಶೋಧನಾ ಪರಿಷತ್ತು
27. ದೂರ ಶಿಕ್ಷಣ ಸಮಿತಿ
28. ಹಣಕಾಸು ಸಮಿತಿ
29. ಇತರ ಪ್ರಾಧಿಕಾರಗಳು
30. ಖಾಲಿ ಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ
31. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು

**ಅಧ್ಯಾಯ – V**

**ಶಾಸನಗಳು ಮತ್ತು ವಿನಿಯಮಗಳು**

32. ಶಾಸನಗಳು
33. ಶಾಸನಗಳ ರಚನೆ ವಿಧಾನ
34. ಶಾಸನಗಳ ತಿದ್ದುಪಡಿಯ ಅಧಿಕಾರ
35. ವಿನಿಯಮಗಳು
36. ವಿನಿಯಮಗಳ ರಚನೆ ವಿಧಾನ
37. ವಿನಿಯಮಗಳ ತಿದ್ದುಪಡಿಗೆ ಅಧಿಕಾರ
38. ಶುಲ್ಕ ನಿಯಂತ್ರಣ ಸಮಿತಿ

**ಅಧ್ಯಾಯ – VI**

**ಸಂಕೀರ್ಣ**

39. ನೌಕರರ ಸೇವಾ ಷರತ್ತುಗಳು
40. ಮೇಲ್ಮನವಿ ಹಕ್ಕು
41. ಭವಿಷ್ಯ ನಿಧಿ ಮತ್ತು ನಿವೃತ್ತಿ ವೇತನ
42. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು
43. ಸಮಿತಿಗಳ ರಚನೆ
44. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು
45. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ
46. ತಾತ್ಕಾಲಿಕ ಉಪಬಂಧಗಳು
47. ಶಾಶ್ವತ ಶಾಸನಬದ್ಧ ದತ್ತಿ ನಿದಿ
48. ವಿಶ್ವವಿದ್ಯಾಲಯದ ದತ್ತಿ ನಿದಿ
49. ಸಾಮಾನ್ಯ ನಿದಿ
50. ಅಭಿವೃದ್ಧಿ ನಿದಿ
51. ನಿಧಿಗಳ ನಿರ್ವಹಣೆ
52. ವಾರ್ಷಿಕ ವರದಿ
53. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ
54. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ
55. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಅಧಿಕಾರ
56. ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು
57. ತೊಂದರೆಗಳ ನಿವಾರಣೆಗೆ ಅಧಿಕಾರ
58. ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

**2010ರ ಅಧಿನಿಯಮ ಸಂಖ್ಯೆ 34:** 2008-09ನೇ ಬಜೆಟ್ ಭಾಷಣದಲ್ಲಿ ಖಾಸಗಿ ವಿಶ್ವವಿದ್ಯಾಲಯದ ಸ್ಥಾಪನೆಯನ್ನು ಉತ್ತೇಜಿಸುವುದಕ್ಕಾಗಿ ಮಾಡಿರುವ ಘೋಷಣೆಯ ಹಿನ್ನೆಲೆಯಲ್ಲಿ, ರಾಜ್ಯದಲ್ಲಿ ಪರಿಶಿಷ್ಟ ಪಂಗಡದವರು ನಿರ್ವಹಿಸುತ್ತಿರುವ ಸಂಸ್ಥೆಯಾದ ಅಲಿಯನ್ಸ್ ಬಿಸಿನೆಸ್ ಸ್ಕೂಲ್, ಬೆಂಗಳೂರು, ಇವರು ಒಂದು ಖಾಸಗಿ ವಿಶ್ವವಿದ್ಯಾಲಯವನ್ನು ಸ್ಥಾಪಿಸಲು ಮುಂದೆ ಬಂದಿರುತ್ತಾರೆ. ಈ ಸಂಸ್ಥೆಯು ಖಾಸಗಿ ವಿಶ್ವವಿದ್ಯಾಲಯವನ್ನು ಸ್ಥಾಪಿಸಲು ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು ಶಿಫಾರಸ್ಸು ಮಾಡಿದೆ. ಇದು, ಶಿಕ್ಷಣದ ಅಗತ್ಯತೆ ಇರುವ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಶಿಕ್ಷಣವು ದೊರಕುವಂತೆ ಮಾಡುವಲ್ಲಿ ನಿಜವಾಗಿಯೂ ನೆರವಾಗುವುದೆಂದು ಭಾವಿಸಲಾಗಿದೆ. ಈ ಖಾಸಗಿ ವಿಶ್ವವಿದ್ಯಾಲಯವು ವ್ಯವಹಾರ, ಶಿಕ್ಷಣ ಕ್ಷೇತ್ರಗಳಲ್ಲಿ ಮತ್ತು ವ್ಯವಸ್ಥಾಪನೆಯ ಕ್ಷೇತ್ರದಲ್ಲಿ ಶಿಕ್ಷಣ, ತರಬೇತಿ ನೀಡುವ ಬಗ್ಗೆ ಒತ್ತು ನೀಡುತ್ತದೆ. ಕರ್ನಾಟಕದಲ್ಲಿ ಈಗ ಉನ್ನತ ಶಿಕ್ಷಣಕ್ಕೆ ಶೇಕಡ 11.5ರಷ್ಟು ವಿದ್ಯಾರ್ಥಿಗಳು ಸೇರಿಕೊಳ್ಳುತ್ತಿದ್ದು, ಈ ವಿಶ್ವವಿದ್ಯಾಲಯದ ಸ್ಥಾಪನೆಯಿಂದಾಗಿ ಈ ಒಟ್ಟು ಪ್ರಮಾಣದಲ್ಲಿ ತ್ವರಿತ ಹೆಚ್ಚಳವಾಗಲಿದೆ.

ಆದ್ದರಿಂದ ಅಲಿಯನ್ಸ್ ವಿಶ್ವವಿದ್ಯಾಲಯದ ಸ್ಥಾಪನೆಗಾಗಿ ಒಂದು ಶಾಸನವನ್ನು ಅಧಿನಿಯಮಿತಗೊಳಿಸುವುದು ಅವಶ್ಯವೆಂದು ಪರಿಗಣಿಸಲಾಗಿದೆ.

ಆದ್ದರಿಂದ ಈ ವಿಧೇಯಕ.

(2010ರ ವಿಧಾನಸಭೆಯ ವಿಧೇಯಕ ಸಂಖ್ಯೆ 02, ಕಡತ ಸಂಖ್ಯೆ ಸಂವ್ಯಶಾಇ 56 ಶಾಸನ 2009)

(ಭಾರತ ಸಂವಿಧಾನದ 7ನೇ ಅನುಸೂಚಿಯ 3ನೇ ಪಟ್ಟಿಯ 25ನೆಯ ನಮೂದನೆಯಡಿಯಲ್ಲಿ ಬರುತ್ತದೆ.)

---

## 2010ರ ಕರ್ನಾಟಕ ಅಧಿನಿಯಮ ಸಂಖ್ಯೆ 34

(2010ರ ಜುಲೈ ಇಪ್ಪತ್ತ ಎಂಟನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಅಲಿಯನ್ಸ್ ವಿಶ್ವವಿದ್ಯಾಲಯ ಅಧಿನಿಯಮ, 2010

(2010ರ ಜುಲೈ ಇಪ್ಪತ್ತ ಎರಡನೇ ದಿನಾಂಕದಂದು ರಾಜ್ಯಪಾಲರ ಅನುಮತಿಯನ್ನು ಪಡೆಯಲಾಗಿದೆ)

ಶಿಕ್ಷಣ, ಸಂಶೋಧನೆ ಮತ್ತು ಸಮುದಾಯ ಸೇವಾ ಚಟುವಟಿಕೆಗಳಿಗೆ ಸಂಬಂಧಪಡುವಷ್ಟರ ಮಟ್ಟಿಗೆ ಜಗತ್ತಿನ ಯಾವುದೇ ವಿಶ್ವವಿದ್ಯಾಲಯದೊಂದಿಗೆ ಹೋಲಿಸಬಹುದಾದ ಜಾಗತಿಕ ಗುಣಮಟ್ಟದ ಒಂದು ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಖಾಸಗಿ ವಲಯದಲ್ಲಿ ಸ್ಥಾಪಿಸಲು ಮತ್ತು ನಿಗಮನಗೊಳಿಸಲು ಒಂದು ಅಧಿನಿಯಮ.

ಎಲ್ಲರಿಗೂ ಉತ್ತಮ ಗುಣಮಟ್ಟದ ಶಿಕ್ಷಣ ಲಭ್ಯವಾಗುವಂತೆ ಮಾಡುವ ಮೂಲಕ ಮತ್ತು ತ್ವರಿತವಾಗಿ ಜಾಗತೀಕರಣಗೊಳ್ಳುತ್ತಿರುವ ಈ ಯುಗದಲ್ಲಿ, ಹೊಸ ಮಾನದಂಡಗಳನ್ನು ರೂಪಿಸಲು ಮತ್ತು ಇಲ್ಲಿ ಇನ್ನು ಮುಂದೆ ಕಂಡುಬರುವ ಕಾರಣಗಳಿಗಾಗಿ ಅಮೂಲ್ಯವಾದ ಜ್ಞಾನ ಪ್ರಸಾರವನ್ನು ಸಾಕಾರಗೊಳಿಸಲು, ಕರ್ನಾಟಕ ರಾಜ್ಯದಲ್ಲಿ ಖಾಸಗಿ ವಲಯದಲ್ಲಿ ಜಾಗತಿಕ ಗುಣಮಟ್ಟದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವುದು ಮತ್ತು ನಿಗಮನಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೊಂದನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ:-

### ಅಧ್ಯಾಯ - I

### ಪ್ರಾರಂಭಿಕ

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಅಲಿಯನ್ಸ್ ವಿಶ್ವವಿದ್ಯಾಲಯ ಅಧಿನಿಯಮ, 2010 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು ರಾಜ್ಯ ಸರ್ಕಾರವು ರಾಜ್ಯ ಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ದಿನಾಂಕದಂದು ಜಾರಿಗೆ ಬರತಕ್ಕದ್ದು.

(ಈ ಅಧಿನಿಯಮವು ಅಧಿಸೂಚನೆ ಸಂಖ್ಯೆ:ಇಡಿ 253 ಯುಎನ್‌ಇ 2010, ದಿ:2.8.2010ರ ಮೂಲಕ ದಿ:2.8.2010ರಿಂದ ಜಾರಿಗೆ ಬಂದಿದೆ.)

**2. ಪರಿಭಾಷೆಗಳು.**- ಈ ಅಧಿನಿಯಮದಲ್ಲಿ ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) "ಪ್ರಶಿಕ್ಷಣ ಪರಿಷತ್ತು (ಅಕೆಡೆಮಿಕ್ ಕೌನ್ಸಿಲ್)" ಎಂದರೆ, 25ನೇ ಪ್ರಕರಣದಡಿಯಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಪ್ರಶಿಕ್ಷಣ ಪರಿಷತ್ತು;

(ಬಿ) "ಕಾರ್ಯಸೂಚಿ ವಿಷಯಗಳು", ಎಂದರೆ, ಶಾಸನಗಳಲ್ಲಿ ಹೆಸರಿಸಬಹುದಾದ ಮತ್ತು ಒಂದು ಸಭೆಯಲ್ಲಿ ಆ ವಿಷಯಗಳನ್ನು ಮತ್ತು ಕಲಾಪಗಳನ್ನು ಅನುಮೋದಿಸಬಹುದೆಂದು ತಮ್ಮ ಸಮ್ಮತಿ ಸೂಚಿಸಿ ಕುಲಾಧಿಪತಿಯವರು ಮುಂಚಿತವಾಗಿಯೇ ಲಿಖಿತ ಅನುಮೋದನೆಯನ್ನು ಕೊಟ್ಟಿದ್ದಾಗ ಮಾತ್ರವೇ ಸಂದರ್ಭಾನುಸಾರ ಪ್ರಬಂಧಕರ ಮಂಡಳಿ ಅಥವಾ ಆಡಳಿತ ಮಂಡಳಿಯು ಕಾರ್ಯಸೂಚಿಯಲ್ಲಿ ಸೇರಿಸಬಹುದಾದ ಅಥವಾ ಚರ್ಚೆಗೆ ತೆಗೆದುಕೊಂಡು ನಿರ್ಣಯವನ್ನು ಕೊಡಬಹುದಾದ ಎಲ್ಲಾ ವಿಷಯಗಳು ಮತ್ತು ಕಲಾಪಗಳು;

(ಸಿ) "ಪ್ರಬಂಧಕರ ಮಂಡಳಿ" ಎಂದರೆ, 23ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಪ್ರಬಂಧಕರ ಮಂಡಳಿ;

(ಡಿ) "ಆಡಳಿತ ಮಂಡಳಿ" ಎಂದರೆ, 24ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಆಡಳಿತ ಮಂಡಳಿ;

(ಇ) "ಕುಲಾಧಿಪತಿ", "ಕುಲಪತಿ", ಮತ್ತು "ಸಹ-ಕುಲಪತಿ" ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ ಮತ್ತು ಸಹ-ಕುಲಪತಿ;

(ಎಫ್) "ಕ್ಯಾಂಪಸ್" ಎಂದರೆ, ಅದು ಎಲ್ಲಾದರೂ ಇರಲಿ ವಿಶ್ವವಿದ್ಯಾಲಯವು ಸ್ಥಾಪಿಸಿದ, ನಿರ್ವಹಿಸಿದ ಅಥವಾ ಮಾನ್ಯತೆ ನೀಡಿದ ಒಂದು ಕ್ಯಾಂಪಸ್;

(ಜಿ) "ಸಮಿತಿಗಳು" ಎಂದರೆ, ಸಂದರ್ಭಾನುಸಾರ ವಿಶ್ವವಿದ್ಯಾಲಯದ ವಿವಿಧ ಕಾರ್ಯಕರ್ತರು ರಚಿಸಿರುವ ಸಮಿತಿಗಳು ಮತ್ತು ಅದರಲ್ಲಿ ನಾಮನಿರ್ದೇಶನ ಸಮಿತಿ, ಹಣಕಾಸು ಸಮಿತಿ, ದೂರಶಿಕ್ಷಣ ಸಮಿತಿ ಮತ್ತು ಇತರ ಯಾವುವೇ ಸಮಿತಿಗಳು ಒಳಗೊಳ್ಳುತ್ತವೆ;

(ಎಚ್) "ಕಂಪನಿ" ಎಂದರೆ, ಒಂದು ಕಂಪೆನಿಯಾಗಿರುವ ಮತ್ತು ಕಂಪೆನಿಗಳ ಅಧಿನಿಯಮ, 1956ರ 25ನೇ ಪ್ರಕರಣದ ಮೇರೆಗೆ ನೋಂದಾಯಿತವಾಗಿರುವ ಅಲಿಯನ್ಸ್ ಬಿಸಿನೆಸ್ ಸ್ಕೂಲ್ ಪ್ರೈವೇಟ್ ಲಿಮಿಟೆಡ್ ಅಥವಾ ಕಂಪೆನಿಗಳ ಅಧಿನಿಯಮ, 1956ರ 25ನೇ ಪ್ರಕರಣದ ಮೇರೆಗೆ ಪ್ರವರ್ತಕರು ರೂಪಿಸಿದ ಮತ್ತು ನೋಂದಾಯಿಸಿದ ಯಾವುದೇ ಇತರ ಕಂಪೆನಿ;

(ಐ) "ಘಟಕ ಕಾಲೇಜು" ಎಂದರೆ, ವಿಶ್ವವಿದ್ಯಾಲಯವು ನಿರ್ವಹಿಸುತ್ತಿರುವ ಒಂದು ಕಾಲೇಜು ಅಥವಾ ಸಂಸ್ಥೆ;

(ಜೆ) "ದೂರಶಿಕ್ಷಣ" ಎಂದರೆ, ದೃಶ್ಯ ಸಂಪರ್ಕ, ಧ್ವನಿ ಸಂಪರ್ಕ, ಗಣಕಯಂತ್ರ, ಬಹುಮಾಧ್ಯಮ (ಮಲ್ಟಿ ಮಿಡಿಯ) ಪ್ರಸಾರ, ದೂರದರ್ಶನ ಪ್ರಸಾರ (ಟೆಲಿಕ್ಯಾಸ್ಟ್), ತಂತ್ರಜ್ಞಾನಗಳು ಮತ್ತು ಸಂಪರ್ಕಸಾಧನಗಳನ್ನು ಬಳಸಿಕೊಂಡು, ಒಂದು ತರಗತಿ, ಕಟ್ಟಡ ಅಥವಾ ನಿವೇಶನದಿಂದ ದೂರದಲ್ಲಿರುವ ಬೇರೊಂದು ತರಗತಿ, ಕಟ್ಟಡ ಅಥವಾ ನಿವೇಶನದಲ್ಲಿರುವವರಿಗೆ ಶಿಕ್ಷಣವನ್ನು ನೀಡುವ ಪ್ರಕ್ರಿಯೆ ಮತ್ತು ಇದು ಅಂಚೆ ಶಿಕ್ಷಣ, ವಿಚಾರಗೋಷ್ಠಿ, ಸಂಪರ್ಕ ಕಾರ್ಯಕ್ರಮ ಅಥವಾ ಅಂಥ ವಿಧಾನಗಳ ಯಾವುದೇ ಎರಡು ಅಥವಾ ಹೆಚ್ಚಿನ ಸಂಯೋಜನೆಗಳು ಮುಂತಾದವುಗಳನ್ನು ಒಳಗೊಳ್ಳುತ್ತದೆ;

(ಕೆ) "ದೂರ ಶಿಕ್ಷಣ ಸಮಿತಿ" ಎಂದರೆ, 27ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವಂತೆ ವಿಶ್ವವಿದ್ಯಾಲಯದ ದೂರ ಶಿಕ್ಷಣ ಸಮಿತಿ;

(ಎಲ್) "ಹಣಕಾಸು ಸಮಿತಿ" ಎಂದರೆ, 28ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವಂತೆ ವಿಶ್ವವಿದ್ಯಾಲಯದ ಹಣಕಾಸು ಸಮಿತಿ;

(ಎಂ) "ಸರ್ಕಾರ" ಎಂದರೆ, ಕರ್ನಾಟಕ ಸರ್ಕಾರ;

(ಎನ್) "ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳು" ಎಂದರೆ, ವಿಶ್ವವಿದ್ಯಾಲಯ ಅನುದಾನ ಆಯೋಗ, ಅಖಿಲ ಭಾರತ ತಾಂತ್ರಿಕ ಶಿಕ್ಷಣಪರಿಷತ್ತು, ಭಾರತೀಯ ವೈದ್ಯಕೀಯ ಪರಿಷತ್ತು, ಭಾರತೀಯ ಔಷಧ ವಿಜ್ಞಾನ ಪರಿಷತ್ತು, ಭಾರತೀಯ ಕೃಷಿ ಸಂಶೋಧನಾ ಪರಿಷತ್ತು, ರಾಷ್ಟ್ರೀಯ ಮೌಲ್ಯಮಾಪನ ಮತ್ತು ಅಧಿಮಾನ್ಯತಾ ಪರಿಷತ್ತು, ರಾಷ್ಟ್ರೀಯ ಬೋಧಕ ಶಿಕ್ಷಣ ಪರಿಷತ್ತು, ದೂರಶಿಕ್ಷಣ ಪರಿಷತ್ತು, ಭಾರತೀಯ ವೈಜ್ಞಾನಿಕ ಮತ್ತು ಸಂಶೋಧನಾ ಪರಿಷತ್ತು ಮುಂತಾದವುಗಳಂಥ ಉನ್ನತ ಶಿಕ್ಷಣದಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುವಂತೆ ನೋಡಿಕೊಳ್ಳುವುದಕ್ಕಾಗಿ ಪ್ರಮಾಣಕಗಳು ಮತ್ತು ಷರತ್ತುಗಳನ್ನು ವಿಧಿಸುವುದಕ್ಕಾಗಿ, ಕೇಂದ್ರ ಸರ್ಕಾರವು ಸ್ಥಾಪಿಸಿರುವ ಒಂದು ಸಂಸ್ಥೆ ಮತ್ತು ಇದರಲ್ಲಿ ಸರ್ಕಾರವೂ ಸೇರಿರುತ್ತದೆ;

(ಒ) "ನಿಯಮಿಸಲಾದುದು" ಎಂದರೆ, ಈ ಅಧಿನಿಯಮದಡಿಯಲ್ಲಿ ರಚಿಸಲಾದ ನಿಯಮಗಳ ಮೂಲಕ ರಾಜ್ಯ ಸರ್ಕಾರದಿಂದ ನಿಯಮಿಸಲಾದುದು;

(ಪಿ) "ಒಂದು ಘಟಕ ಕಾಲೇಜಿಗೆ ಸಂಬಂಧಪಟ್ಟಂತೆ ಪ್ರಾಂಶುಪಾಲರು" ಎಂದರೆ, ಘಟಕ ಕಾಲೇಜಿನ ಮುಖ್ಯಸ್ಥರು ಮತ್ತು ಪ್ರಾಂಶುಪಾಲರು ನೇಮಕವಾಗಿರದಿದ್ದಲ್ಲಿ ಅಥವಾ ನೇಮಕವಾದ ಪ್ರಾಂಶುಪಾಲರ ಗೈರುಹಾಜರಿಯಲ್ಲಿ, ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ತಾತ್ಕಾಲಿಕವಾಗಿ ನೇಮಕಗೊಂಡಿರುವ ಉಪಪ್ರಾಂಶುಪಾಲರು ಅಥವಾ ಇತರ ಯಾವೊಬ್ಬ ವ್ಯಕ್ತಿಯೂ ಇದರಲ್ಲಿ ಒಳಗೊಳ್ಳುತ್ತಾರೆ;

(ಕ್ಯೂ) "ಕುಲಸಚಿವರು" ಎಂದರೆ, ವಿಶ್ವವಿದ್ಯಾಲಯದ ಕುಲಸಚಿವರು;

(ಆರ್) "ಪ್ರಾದೇಶಿಕ ಕೇಂದ್ರ" ಎಂದರೆ, ಯಾವುದೇ ಪ್ರದೇಶದಲ್ಲಿನ ಅಧ್ಯಯನ ಕೇಂದ್ರಗಳ ಕಾರ್ಯವನ್ನು ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ಮಾಡುವ ಉದ್ದೇಶಕ್ಕಾಗಿ ಮತ್ತು ಅಂಥ ಕೇಂದ್ರಕ್ಕೆ ಆಡಳಿತ ಮಂಡಳಿಯು ವಹಿಸಿಕೊಡಬಹುದಾದ ಇತರ ಕರ್ತವ್ಯಗಳನ್ನು ನೆರವೇರಿಸುವುದಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಅಥವಾ ನಿರ್ವಹಿಸಿಕೊಂಡುಬರುವ ಒಂದು ಕೇಂದ್ರ;

(ಎಸ್) ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ "ಪ್ರಾಯೋಜಕ ಪ್ರಾಧಿಕಾರ" ಅಥವಾ "ಪ್ರಾಯೋಜಕ ಸಂಸ್ಥೆ" ಎಂದರೆ, ಕಂಪೆನಿ;

(ಟಿ) "ರಾಜ್ಯ" ಎಂದರೆ, ಕರ್ನಾಟಕ ರಾಜ್ಯ;

(ಯು) "ಶಾಸನಗಳು" ಮತ್ತು "ವಿನಿಯಮಗಳು" ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಶಾಸನಗಳು ಮತ್ತು ವಿನಿಯಮಗಳು;

(ವಿ) "ಅಧ್ಯಯನ ಕೇಂದ್ರ" ಎಂದರೆ, ವಿದ್ಯಾರ್ಥಿಗಳಿಗೆ ಅಗತ್ಯವಾದ ಬುದ್ಧಿವಾದ, ಸಲಹೆಗಳನ್ನು ನೀಡುವ ಅಥವಾ ಇತರ ಯಾವುದೇ ನೆರವನ್ನು ನೀಡುವ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ, ನಿರ್ವಹಿಸಿಕೊಂಡುಬಂದ ಅಥವಾ ಮಾನ್ಯತೆ ನೀಡಿದ ಒಂದು ಕೇಂದ್ರ;

(ಡಬ್ಲ್ಯೂ) "ಅಧ್ಯಾಪಕರು" ಎಂದರೆ, ಒಬ್ಬ ಪ್ರತಿಷ್ಠಿತ ಪ್ರಾಧ್ಯಾಪಕರು, ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಸಹ-ಸಂಶೋಧಕರು ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಒಂದು ಘಟಕ ಕಾಲೇಜಿನಲ್ಲಿ ಶಿಕ್ಷಣ ನೀಡುವುದಕ್ಕೆ ಅಥವಾ ಸಂಶೋಧನೆ ನಡೆಸುವುದಕ್ಕೆ ಅಥವಾ ಸಂಶೋಧನೆಗೆ ಮಾರ್ಗದರ್ಶನ ನೀಡುವುದಕ್ಕೆ

ನೇಮಕವಾಗಬಹುದಾದಂಥ ಯಾವೊಬ್ಬ ವ್ಯಕ್ತಿ ಹಾಗೂ ಅವರನ್ನು ಒಳಗೊಳ್ಳುತ್ತದೆ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗವು ನಿಯಮಿಸಿದ ಗುಣಮಟ್ಟಗಳಿಗೆ ಅನುಸಾರವಾಗಿ ಇರುವ ಘಟಕ ಕಾಲೇಜಿನ ಪ್ರಾಂಶುಪಾಲರು ಇದರಲ್ಲಿ ಒಳಗೊಳ್ಳುತ್ತಾರೆ;

(ಎಕ್ಸ್) "ವಿಶ್ವವಿದ್ಯಾಲಯ ಅನುದಾನ ಆಯೋಗ" ಎಂದರೆ, ವಿಶ್ವವಿದ್ಯಾಲಯ ಅನುದಾನ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) 4ನೇ ಪ್ರಕರಣದಡಿಯಲ್ಲಿ ಸ್ಥಾಪಿತವಾದ ಆಯೋಗ;

(ವೈ) "ವಿಶ್ವವಿದ್ಯಾಲಯ" ಎಂದರೆ, 4ನೇ ಪ್ರಕರಣದಡಿಯಲ್ಲಿ ಸ್ಥಾಪಿಸಿ ನಿಗಮಿತಗೊಳಿಸಲಾದ ಅಲಿಯನ್ಸ್ ವಿಶ್ವವಿದ್ಯಾಲಯ;

(ಜೆಡ್) "ಸಂದರ್ಶಕರು" ಮತ್ತು "ಸಹ ಸಂದರ್ಶಕರು" ಎಂದರೆ, 13ನೇ ಮತ್ತು 14ನೇ ಪ್ರಕರಣಗಳಲ್ಲಿ ನಿರ್ದಿಷ್ಟಪಡಿಸಿದ ವಿಶ್ವವಿದ್ಯಾಲಯದ ಸಂದರ್ಶಕರು ಮತ್ತು ಸಹಸಂದರ್ಶಕರು.

## ಅಧ್ಯಾಯ – II

## ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

**3. ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ.–** (1) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಹಕ್ಕನ್ನು ಕಂಪನಿಯು ಹೊಂದಿರತಕ್ಕದ್ದು.

(2) ಕಂಪನಿಯು (ಪ್ರವರ್ತಕರು ಪರಿಶಿಷ್ಟ ಪಂಗಡ ಸಮುದಾಯಕ್ಕೆ ಸೇರಿರತಕ್ಕದ್ದು) ರಾಜ್ಯ ಸರ್ಕಾರಕ್ಕೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವವನ್ನು ಸಲ್ಲಿಸತಕ್ಕದ್ದು.

(3) ಪ್ರಸ್ತಾವವು ಈ ಮುಂದಿನ ವಿವರಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕಂಪನಿಯ ವಿವರಗಳೊಂದಿಗೆ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು;

(ii) ವಿಶ್ವವಿದ್ಯಾಲಯದ ವ್ಯಾಪ್ತಿ ಮತ್ತು ಸ್ಥಾನಮಾನ ಹಾಗೂ ಭೂಮಿಯ ಲಭ್ಯತೆ;

(iii) ಪ್ರಾರಂಭದ ದಿನಾಂಕದಿಂದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳಬೇಕೆಂದಿರುವ ಅಧ್ಯಯನ ಮತ್ತು ಸಂಶೋಧನಾ ಕಾರ್ಯಕ್ರಮಗಳ ಸ್ವರೂಪ ಮತ್ತು ಬಗೆಗಳು;

(iv) ಪ್ರಾರಂಭಿಸಬೇಕೆಂದು ಪ್ರಸ್ತಾಪಿಸಿರುವ ವಿದ್ಯಾ ವಿಭಾಗಗಳು (ಫ್ಯಾಕಲ್ಟಿಗಳು), ಅಧ್ಯಯನ ಕ್ರಮಗಳ ಮತ್ತು ಸಂಶೋಧನೆಗಳ ಸ್ವರೂಪ;

(v) ಕಟ್ಟಡಗಳು, ಸಲಕರಣೆಗಳು ಮತ್ತು ರಚನಾ ಸೌಕರ್ಯಗಳನ್ನು ಒದಗಿಸುವಂಥ ಕ್ಯಾಂಪಸ್ ಅಭಿವೃದ್ಧಿ;

(vi) ಪ್ರಾರಂಭದ ದಿನಾಂಕದ ತರುವಾಯದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಗಾಗಿನ ಬಂಡವಾಳ ವೆಚ್ಚಗಳ ಹಂತಗಳು;

(vii) ಬಾಬುವಾರು ಆವರ್ತಕ ವೆಚ್ಚ, ಆರ್ಥಿಕ ಮೂಲಗಳು ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗಾಗಿ ವಹಿಸುವ ಅಂದಾಜು ವೆಚ್ಚ;

(viii) ಸಂಪನ್ಮೂಲ ಸಂಗ್ರಹಣೆಗಾಗಿ ಯೋಜನೆ ಮತ್ತು ಅದಕ್ಕಾಗಿನ ಬಂಡವಾಳ ವೆಚ್ಚ ಮತ್ತು ಪ್ರತಿಯೊಂದು ಮೂಲಕ್ಕೆ ಮರು ಸಂದಾಯ ಮಾಡುವ ರೀತಿ;

(ix) ವಿದ್ಯಾರ್ಥಿಗಳಿಂದ ಶುಲ್ಕ ವಸೂಲಿ ಸಲಹಾ ಸೇವೆ ಮತ್ತು ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಿಗೆ ಸಂಬಂಧಿಸಿದ ಇತರ ಚಟುವಟಿಕೆಗಳಿಂದ ನಿರೀಕ್ಷಿತ ಆದಾಯಗಳು ಮತ್ತು ಇತರ ನಿರೀಕ್ಷಿತ ಆದಾಯಗಳ ಮೂಲಕ ಆಂತರಿಕವಾಗಿ ನಿಧಿ ಸಂಗ್ರಹಿಸುವ ಯೋಜನೆ;

(x) ಘಟಕವೊಂದಕ್ಕೆ ತಗಲುವ ವೆಚ್ಚ ಆರ್ಥಿಕವಾಗಿ ದುರ್ಬಲವಾದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕದಲ್ಲಿ ಎಷ್ಟರವರೆಗೆ ರಿಯಾಯಿತಿಗಳನ್ನು ಅಥವಾ ವಿನಾಯತಿಗಳನ್ನು ಫ್ರೀಶಿಪ್, ವಿದ್ಯಾರ್ಥಿ ವೇತನ ನೀಡಲಾಗುವುದು ಎಂಬುದರ ವಿವರಗಳನ್ನು ಮತ್ತು ಅನಿವಾಸಿ ಭಾರತೀಯರಿಗೆ ಅಥವಾ ಭಾರತೀಯ ಮೂಲದ ವ್ಯಕ್ತಿಗಳಿಗೆ ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳು ಪ್ರಾಯೋಜಿಸಿದ ವಿದ್ಯಾರ್ಥಿಗಳಿಗೆ ಮತ್ತು ಭಾರತವನ್ನುಳಿದು ಇತರ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ವಿಧಿಸತಕ್ಕ ಶುಲ್ಕದ ದರಗಳು ಬೇರೆ ಬೇರೆ ಇದ್ದಲ್ಲಿ, ಅವುಗಳನ್ನು ಸೂಚಿಸುವ ಶುಲ್ಕ ರಚನೆಯ ವಿವರಗಳು;

(xi) ಸಂಬಂಧಪಟ್ಟ ವಿದ್ಯಾ ವಿಷಯಗಳಲ್ಲಿ ಎಷ್ಟು ವರ್ಷಗಳ ಅನುಭವ ಮತ್ತು ಪರಿಣಿತಿ ಕಂಪೆನಿಯು ದೊರಕಿಸಿಕೊಡಲಿದೆ ಹಾಗೂ ಅದರ ಹಣಕಾಸಿನ ಸಂಪನ್ಮೂಲಗಳು;

(xii) ವಿಶ್ವವಿದ್ಯಾಲಯದಲ್ಲಿರುವ ವ್ಯಾಸಂಗ ಕ್ರಮಗಳಿಗೆ ಹಿಂದುಳಿದ ಸಮುದಾಯಕ್ಕೆ ಕಾಯ್ದಿರಿಸಿದ ಸೀಟುಗಳೊಡನೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕಾಗಿ ಇರುವ ವ್ಯವಸ್ಥೆ;

(xiii) ವಿಶ್ವವಿದ್ಯಾಲಯವು ಸ್ಥಾಪನೆಯಾಗುವುದಕ್ಕೆ ಮುಂಚೆ ನೆರವೇರಿಸಬೇಕೆಂದು ರಾಜ್ಯ ಸರ್ಕಾರವು ಅಗತ್ಯಪಡಿಸಬಹುದಾದಂಥ ಇತರ ಷರತ್ತುಗಳ ನೆರವೇರಿಕೆಯು ಯಾವ ಹಂತದಲ್ಲಿದೆ.

(4). ಸ್ವೀಕೃತವಾದ ಪ್ರಸ್ತಾವಗಳನ್ನು ಪರೀಕ್ಷಿಸುವುದಕ್ಕಾಗಿ ಒಂದು ಪರಿಶೋಧನಾ ಸಮಿತಿಯನ್ನು ರಚಿಸತಕ್ಕದ್ದು ಮತ್ತು ಅದು ರಾಜ್ಯ ಸರ್ಕಾರಕ್ಕೆ ಶಿಫಾರಸ್ಸುಗಳನ್ನು ಮಾಡತಕ್ಕದ್ದು.

**4. ವಿಶ್ವವಿದ್ಯಾಲಯದ ಸ್ಥಾಪನೆ.–** (1) ರಾಜ್ಯ ಸರ್ಕಾರವು, ಪರಿಶೋಧನಾ ಸಮಿತಿಯು ಮಾಡಿದ ಶಿಫಾರಸ್ಸುಗಳನ್ನು ಪರಿಶೀಲಿಸಿದ ತರುವಾಯ ಮತ್ತು ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ, 3ನೇ ಪ್ರಕರಣದ (3)ನೇ ಉಪ-ಪ್ರಕರಣದಲ್ಲಿ ಅಗತ್ಯಪಡಿಸಲಾದ ವಿವರಗಳನ್ನು ಕಂಪೆನಿಯು ಒದಗಿಸಿದೆ ಎಂದು ಅದಕ್ಕೆ ಮನವರಿಕೆಯಾದರೆ, ಅದು 47ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಬೇಕೆಂದು ಕಂಪೆನಿಗೆ ನಿರ್ದೇಶಿಸಬಹುದು.

(2) ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಸ್ಥಾಪನೆಯ ತರುವಾಯ, ರಾಜ್ಯಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, ರಾಜ್ಯದಲ್ಲಿ "ಅಲಿಯನ್ಸ್ ವಿಶ್ವವಿದ್ಯಾಲಯ" ಎಂಬ ಹೆಸರಿನ ಒಂದು ವಿಶ್ವವಿದ್ಯಾಲಯವನ್ನು ಸ್ಥಾಪಿಸುವುದಕ್ಕೆ ಮಂಜೂರಾತಿಯನ್ನು ನೀಡಬಹುದು.

(3) ಪ್ರಾಯೋಜಕ ಸಂಸ್ಥೆಯು, ರಾಜ್ಯದಲ್ಲಿ ನಿರ್ಧರಿಸಬಹುದಾದಂಥ ಸ್ಥಳದಲ್ಲಿ ವಿಶ್ವವಿದ್ಯಾಲಯದ ಕೇಂದ್ರಕಾರ್ಯಸ್ಥಾನವು ಇರತಕ್ಕದ್ದು. ವಿಶ್ವವಿದ್ಯಾಲಯವು ತನ್ನ ಕ್ಯಾಂಪಸ್ಸುಗಳನ್ನು ಅಥವಾ ಪ್ರಾದೇಶಿಕ ಕೇಂದ್ರಗಳನ್ನು, ಮತ್ತು ಅಧ್ಯಯನ ಕೇಂದ್ರಗಳನ್ನು, ಭಾರತದಲ್ಲಿ ಅಥವಾ ವಿದೇಶಗಳಲ್ಲಿ, ಆ ಬಗ್ಗೆ ಸಂಬಂಧಪಟ್ಟ ಸರ್ಕಾರಗಳ ಅನುಮತಿಯನ್ನು ಪಡೆದುಕೊಳ್ಳಬೇಕಾಗಿದ್ದಲ್ಲಿ, ಹಾಗೆ ಪಡೆದುಕೊಳ್ಳುವುದಕ್ಕೊಳಪಟ್ಟು, ಹೊಂದಿರತಕ್ಕದ್ದು.

(4) ಹಾಗೆ ಸ್ಥಾಪಿತವಾದ ವಿಶ್ವವಿದ್ಯಾಲಯದಲ್ಲಿ ಇರುವ ಕುಲಾಧಿಪತಿಯವರು, ಕುಲಪತಿಯವರು, ಪ್ರಬಂಧಕ ಮಂಡಳಿಯ ಸದಸ್ಯರುಗಳು, ಆಡಳಿತ ಮಂಡಳಿಯ ಹಾಗೂ ಪ್ರಶಿಕ್ಷಣ ಪರಿಷತ್ತಿನ ಸದಸ್ಯರುಗಳಾಗಿ ತತ್ಕಾಲದಲ್ಲಿ ಹಾಗೆ ಹುದ್ದೆಯನ್ನು ಹೊಂದಿರುವವರು ಇವರೆಲ್ಲರೂ ಕೂಡಿ ಒಂದು ನಿಗಮಿತ ನಿಕಾಯವಾಗಿರತಕ್ಕದ್ದು. ಮತ್ತು ಅದು ವಿಶ್ವವಿದ್ಯಾಲಯದ ಹೆಸರಿನಲ್ಲಿ ದಾವೆ ಹೂಡಬಹುದು ಮತ್ತು ದಾವೆಗೊಳಗಾಗಬಹುದು.

(5) (2)ನೇ ಉಪ-ಪ್ರಕರಣದಡಿಯಲ್ಲಿ ವಿಶ್ವವಿದ್ಯಾಲಯವು ಸ್ಥಾಪನೆಯಾದ ಮೇಲೆ, ವಿಶ್ವವಿದ್ಯಾಲಯದ ಉದ್ದೇಶಕ್ಕಾಗಿ, ವಿಶ್ವವಿದ್ಯಾಲಯವು ಆರ್ಜಿಸಿದ, ರಚಿಸಿದ, ಏರ್ಪಾಟು ಮಾಡಿಕೊಂಡ ಅಥವಾ ಕಟ್ಟಲ್ಪಟ್ಟ ಭೂಮಿ ಮತ್ತಿತರ ಸ್ಥಿರ ಮತ್ತು ಚರ ಆಸ್ತಿಗಳು, ಅವು ಎಲ್ಲೇ ಇರಲಿ, ವಿಶ್ವವಿದ್ಯಾಲಯದಲ್ಲಿ ನಿಹಿತವಾಗಿರತಕ್ಕದ್ದು.

(6) ವಿಶ್ವವಿದ್ಯಾಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ, ವಾದ ಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂಥ ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

(7) ವಿಶ್ವವಿದ್ಯಾಲಯದಲ್ಲಿನ ಭೂಮಿ, ಕಟ್ಟಡ ಮತ್ತು ಇತರ ಆಸ್ತಿಗಳನ್ನು ಇತರ ಯಾವುದೇ ಉದ್ದೇಶಕ್ಕಾಗಿ ಬಳಸತಕ್ಕದ್ದಲ್ಲ.

**5. ಅನುದಾನಗಳು ಮತ್ತು ಹಣಕಾಸು ನೆರವು.–** ವಿಶ್ವವಿದ್ಯಾಲಯವು ಸ್ವಂತ ಧನಮೂಲ ಉಳ್ಳದ್ದಾಗಿರತಕ್ಕದ್ದು ಮತ್ತು ರಾಜ್ಯದಿಂದ ಅಥವಾ ರಾಜ್ಯದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಇತರ ಸಂಸ್ಥೆ ಅಥವಾ ನಿಗಮದಿಂದ ಯಾವುದೇ ನಿರ್ವಹಣಾ ಸಹಾಯ ಅನುದಾನ ಅಥವಾ ಯಾವುದೇ ಹಣಕಾಸು ನೆರವನ್ನು ಹಕ್ಕಿನಿಂದ ಕೇಳತಕ್ಕದ್ದಲ್ಲ ಅಥವಾ ಅದನ್ನು ಪಡೆಯಲು ಹಕ್ಕನ್ನು ಹೊಂದಿರತಕ್ಕದ್ದಲ್ಲ:

ಪರಂತು, ರಾಜ್ಯವು,–

(ಎ) ಇತರ ರಾಜ್ಯ ಸರ್ಕಾರದ ಸಂಘಟನೆಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿರುವಂಥದ್ದೇ ಸಂಶೋಧನೆ, ಅಭಿವೃದ್ಧಿ ಮತ್ತಿತರ ಚಟುವಟಿಕೆಗಳಿಗೆ; ಅಥವಾ

(ಬಿ) ರಾಜ್ಯ ಸರ್ಕಾರದ ನೆರವನ್ನು ಅವಲಂಬಿಸಿದ ಯಾವುದೇ ನಿರ್ದಿಷ್ಟ ಸಂಶೋಧನೆ ಅಥವಾ ಕಾರ್ಯಕ್ರಮಗಳಿಗಾಗಿ; ಮತ್ತು

(ಸಿ) ರಾಜ್ಯ ಕಾರ್ಯನೀತಿಯ ಬದಲಾವಣೆಗೆ ಒಳಪಟ್ಟು ಅಥವಾ ಅನ್ಯಥಾ ಇದೇ ಬಗೆಯ ವಿಶ್ವವಿದ್ಯಾಲಯಗಳಿಗೆ ಅಥವಾ ಅವುಗಳ ಪ್ರಯೋಜನಕ್ಕಾಗಿ ನೆರವು ಒದಗಿಸಿರುವ ಸಂದರ್ಭಗಳಲ್ಲಿ,

–ಅನುದಾನದ ಮೂಲಕ ಅಥವಾ ಅನ್ಯಥಾ ನೆರವು ನೀಡುವುದೂ ಒಳಗೊಂಡಂತೆ, ಹಣಕಾಸು ಬೆಂಬಲವನ್ನು ಒದಗಿಸಬಹುದು.

**6. ಘಟಕ ಕಾಲೇಜನ್ನು ಸ್ಥಾಪಿಸುವುದಕ್ಕೆ ಅಧಿಕಾರ.–** ವಿಶ್ವವಿದ್ಯಾಲಯವು, ರಾಜ್ಯದಲ್ಲಿ ತನಗೆ ಸೂಕ್ತವೆನಿಸುವಂಥ ಸ್ಥಳಗಳಲ್ಲಿ ಘಟಕ ಕಾಲೇಜುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದಿರಬಹುದು.

**7. ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು.–** ವಿಶ್ವವಿದ್ಯಾಲಯವು, ತನ್ನ ಮುನ್ನೋಟ, ಗುರಿ ಮತ್ತು ಧ್ಯೇಯೋದ್ದೇಶಗಳನ್ನು ಸಾಧಿಸಲು ಈ ಮುಂದಿನಂತೆ ವಿವಿಧ ಬಗೆಯ ಕಾರ್ಯತಂತ್ರಗಳನ್ನು ಆಯೋಜಿಸತಕ್ಕದ್ದು, ಎಂದರೆ:–

(i) ವ್ಯವಹಾರ ಆಡಳಿತ ಮತ್ತು ವ್ಯವಸ್ಥಾಪನೆ, ಸಾರ್ವಜನಿಕ ನೀತಿ ಮತ್ತು ಆಡಳಿತ, ತಂತ್ರಜ್ಞಾನ, ಆರೋಗ್ಯ ವಿಜ್ಞಾನ, ಪರಿಸರ ಮತ್ತು ಹವಾಮಾನ ಬದಲಾವಣೆ, ಜಾಗತೀಕರಣ ಮತ್ತು ರಾಷ್ಟ್ರ ಸೀಮಾತೀತ ಸಂಬಂಧಗಳೂ ಸೇರಿದಂತೆ ಜೀವನ ವಿಜ್ಞಾನಗಳಂಥ ವಿಷಯಗಳಲ್ಲಿ, ಲಿಂಗ, ಮೂಲವಂಶ, ಜನಾಂಗ, ವಯೋಮಾನ, ಸಾಮಾಜಿಕ ಮತ್ತು ಆರ್ಥಿಕ ಒಕ್ಕೂಟಗಳೂ ಸೇರಿದಂತೆ, ಆದರೆ ಅವುಗಳಿಗೇ ಸೀಮಿತಗೊಳ್ಳದೇ ಇಡೀ ಸಮಾಜದ ಮೇಲೆ ಪರಿಣಾಮ ಬೀರುವ ಅಂಶಗಳಂಥ ವಿವಿಧ ವಿಷಯಗಳಲ್ಲಿ ಬೋಧನೆಯನ್ನು, ಶಿಕ್ಷಣವನ್ನು, ತರಬೇತಿಯನ್ನು ನೀಡುವುದು. ಸಂಶೋಧನೆ, ಅಭಿವೃದ್ಧಿ ಮತ್ತು ಸಮುದಾಯ ಸೇವಾ ಚಟುವಟಿಕೆಯನ್ನು ಕೈಗೊಳ್ಳುವುದು ಮತ್ತು ಸಾಮಾನ್ಯವಾಗಿ ಮಾನವನ ಜೀವನದ ಗುಣಮಟ್ಟವನ್ನು ಸುಧಾರಿಸುವ ಸಾಮರ್ಥ್ಯವುಳ್ಳ ಚಟುವಟಿಕೆಗಳಲ್ಲಿ ತೊಡಗುವುದು;

(ii) ಭಾರತದಲ್ಲಿ ಮತ್ತು ವಿದೇಶಗಳಲ್ಲಿ ರಾಷ್ಟ್ರ ನಿರ್ಮಾಣ ಚಟುವಟಿಕೆಗಳಲ್ಲಿ ತೊಡಗಿರುವ ಬೋಧಕರು, ಶಿಕ್ಷಕರು, ವೃತ್ತಿಗರು, ಆಡಳಿತಗಾರರು ಮತ್ತು ಇತರ ವೃತ್ತಿಪರರಿಗಾಗಿ ಸಾಮರ್ಥ್ಯದಾಯಕವಾದ, ಪರಿಣತಿ ಹೆಚ್ಚಿಸುವಂಥ ಮತ್ತು ಅಭಿವೃದ್ಧಿದಾಯಕವಾದ ಉನ್ನತ ಗುಣಮಟ್ಟದ ತರಬೇತಿಯನ್ನು ರೂಪಿಸುವುದು, ವಿನ್ಯಾಸಗೊಳಿಸುವುದು ಮತ್ತು ನೀಡುವುದು;

(iii) ಸಮಗ್ರ ಜೀವನದ ಗುಣಮಟ್ಟವನ್ನು ಸುಧಾರಿಸಲು ಅನುಕೂಲವಾಗುವಂತೆ ಭಾರತದ ವಿವಿಧ ರಾಜ್ಯಗಳಲ್ಲಿ ಮತ್ತು ವಿದೇಶಗಳಲ್ಲಿ ಸಂಪನ್ಮೂಲ ಕೇಂದ್ರಗಳನ್ನು ರೂಪಿಸುವುದು ಮತ್ತು ಅಭಿವೃದ್ಧಿ ಪಡಿಸುವುದು;

(iv) ಎಲ್ಲಾ ರಾಷ್ಟ್ರಗಳೊಂದಿಗೆ ಇರುವ ಸಂಬಂಧಗಳನ್ನು ಬಲಪಡಿಸಲು ಮತ್ತು ಮನುಕುಲವು ಎದುರಿಸುತ್ತಿರುವ ಅಸಂಖ್ಯಾತ ಸಮಸ್ಯೆಗಳನ್ನು ಸಮಗ್ರತಾ ದೃಷ್ಟಿಯಿಂದ ಅರ್ಥೈಸುವುದನ್ನು ಅಭಿವೃದ್ಧಿಪಡಿಸಲು ಮತ್ತು ಆ ಕುರಿತು

ನಿವಾರಣೋಪಾಯಗಳನ್ನು ಸೂಚಿಸಲು ಭಾರತದ ವಿವಿಧ ಸ್ಥಳಗಳಲ್ಲಿ ಮತ್ತು ಇತರ ದೇಶಗಳಲ್ಲಿ ಕ್ಯಾಂಪಸ್‌ಗಳನ್ನು ಮತ್ತು ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದು ಮತ್ತು ಅವುಗಳನ್ನು ನಡೆಸುವುದು;

(v) ಮುಂದುವರಿಕೆ ಶಿಕ್ಷಣ ಮತ್ತು ದೂರ ಶಿಕ್ಷಣ ವ್ಯವಸ್ಥೆ ಇಲ್ಲದಿದ್ದರೆ ಶಿಕ್ಷಣ ಪಡೆಯುವುದು ದುರ್ಲಭವೆನಿಸುವ ಬಹುಸಂಖ್ಯಾತ ಜನರನ್ನು ಅರ್ಥಪೂರ್ಣವಾದ ರೀತಿಯಲ್ಲಿ ತಲುಪಲು ಮುಂದುವರಿಕೆ ಶಿಕ್ಷಣ ಮತ್ತು ದೂರ ಶಿಕ್ಷಣ ಕಾರ್ಯಕ್ರಮಗಳನ್ನು ಕಲ್ಪಿಸುವುದು;

(vi) ಮೌಲ್ಯನಿರ್ಧರಣೆಯ ಮತ್ತು ಮೌಲ್ಯಮಾಪನದ ವಿವಿಧ ಆಧುನಿಕ ಸುಸಂಬದ್ಧ ಮತ್ತು ಅಂಗೀಕೃತ ವಿಧಾನಗಳ ಮೂಲಕ ಮಾಡಿದ ಮೌಲ್ಯಮಾಪನದಲ್ಲಿ ಉತ್ತೀರ್ಣರಾಗಿ ಶಿಕ್ಷಣವನ್ನು ಯಶಸ್ವಿಯಾಗಿ ಮುಗಿಸುವವರಿಗೆ ನೀಡಲು ಪದವಿಗಳು, ಡಿಪ್ಲೋಮೋಗಳು, ಪ್ರಮಾಣಪತ್ರಗಳು ಮತ್ತು ಯಶೋಪತ್ರದಂಥ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು ಮತ್ತು ಅವುಗಳನ್ನು ಪ್ರದಾನ ಮಾಡುವುದು;

(vii) ವಿದ್ಯಾರ್ಥಿಗಳಿಗಾಗಿ, ಬೋಧಕ ವೃಂದದವರಿಗಾಗಿ ಮತ್ತು ಇತರರಿಗಾಗಿ ನಿರ್ದಿಷ್ಟ ಶೈಕ್ಷಣಿಕ ಮತ್ತು ಸಂಶೋಧನಾ ಕಾರ್ಯಕ್ರಮಗಳನ್ನು, ತರಬೇತಿ ಕಾರ್ಯಕ್ರಮಗಳನ್ನು, ಸಮಾಲೋಚಕ ಕಾರ್ಯಗಳ ವಹಿಸುವಿಕೆಯನ್ನು ಮತ್ತು ವಿನಿಮಯ ಕಾರ್ಯಕ್ರಮಗಳನ್ನು ಪರಿಕಲ್ಪಿಸಲು, ವಿನ್ಯಾಸಗೊಳಿಸಲು, ಅಭಿವೃದ್ಧಿಪಡಿಸಲು, ಒಪ್ಪಿಸಲು, ಕೊಡಲು, ಮೌಲ್ಯಮಾಪನ ಮಾಡಲು ಮತ್ತು ಮಾನ್ಯ ಮಾಡಲು, ಭಾರತದಲ್ಲಿ ಮತ್ತು ವಿದೇಶಗಳಲ್ಲಿ ಇತರ ಕಾಲೇಜುಗಳೊಂದಿಗೆ, ವಿಶ್ವವಿದ್ಯಾಲಯಗಳೊಂದಿಗೆ, ಸಂಶೋಧನಾ ಸಂಸ್ಥೆಗಳೊಂದಿಗೆ, ಲಾಭಕಾಂಕ್ಷಿಗಳಲ್ಲದ ಸಂಸ್ಥೆಗಳೊಂದಿಗೆ, ವೃತ್ತಿಪರ ಸಂಸ್ಥೆಗಳೊಂದಿಗೆ ಅಥವಾ ನಿಕಾಯಗಳೊಂದಿಗೆ ಅಥವಾ ಇತರ ಸಂಘಟನೆಗಳೊಂದಿಗೆ ಸಹಯೋಗ ಹೊಂದುವುದು ಮತ್ತು ಸಹಕರಿಸುವುದು;

(viii) ವಿಚಾರಗೋಷ್ಠಿಗಳು, ಕಾರ್ಯಗಾರಗಳು, ಉಪನ್ಯಾಸಮಾಲೆಗಳು, ಚರ್ಚೆಗಳು, ಸಮ್ಮೇಳನಗಳು, ನಿರಂತರ ಶಿಕ್ಷಣ ಕಾರ್ಯಕ್ರಮಗಳು, ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳು, ಪ್ರಕಟಣೆಗಳು ಹಾಗೂ ತರಬೇತಿ ಕಾರ್ಯಕ್ರಮಗಳು ಮತ್ತು ಕ್ರೀಡೆಗಳ ಮೂಲಕ ರಾಷ್ಟ್ರೀಯ ಮತ್ತು ಅಂತರ ರಾಷ್ಟ್ರೀಯ ಮಹತ್ವದ ವಿಷಯಗಳ ಬಗ್ಗೆ ಸಾರ್ವಜನಿಕ ಚರ್ಚೆಗೆ ಉತ್ತೇಜಿಸುವುದು ಮತ್ತು ಬೆಳೆಸುವುದು;

(ix) ವಿಶ್ವಾದ್ಯಂತ ಇರುವ ಇಂಥದೇ ಮುನ್ನೋಟ, ಗುರಿ, ಕಾರ್ಯತಂತ್ರ ಮತ್ತು ಧ್ಯೇಯೋದ್ದೇಶಗಳನ್ನು ಹೊಂದಿರುವ ಯಾವುದೇ ಇತರ ಸಂಸ್ಥೆಯೊಂದಿಗೆ ಅಥವಾ ಸಂಸ್ಥೆಗಳೊಂದಿಗೆ ಪಾಲುಗಾರಿಕೆ, ಸಹಯೋಗ, ಸಹಕಾರ, ಜಂಟಿ ಪ್ರಯತ್ನ, ಮೈತ್ರಿ ಕಾರ್ಯಕ್ರಮ ಅಥವಾ ಯಾವುದೇ ಇತರ ಪರಸ್ಪರ ಪ್ರಯೋಜನಕರ ಸಂಬಂಧಗಳ ಮೂಲಕ ಬೋಧಕ ವೃಂದದವರ, ಸಂಶೋಧಕರ ಮತ್ತು ಪೂರಕ ಸಿಬ್ಬಂದಿಯ ಅಭಿವೃದ್ಧಿಗಾಗಿ ಮತ್ತು ಅವರಿಗೆ ತರಬೇತಿ ನೀಡುವುದಕ್ಕಾಗಿ ಕಾರ್ಯಕ್ರಮಗಳನ್ನು ರೂಪಿಸುವುದು ಮತ್ತು ಕೈಗೊಳ್ಳುವುದು;

(x) ಭಾರತದಲ್ಲಿರುವ ಅಥವಾ ವಿದೇಶದಲ್ಲಿರುವ ಯಾವುದೇ ಸಂಸ್ಥೆಯ ಸಹಯೋಗದೊಂದಿಗೆ ಸಂಶೋಧನೆ ಮತ್ತು ಸಮಾಲೋಚನೆ ಹಾಗೂ ಶಿಫಾರಸನ್ನು ಪ್ರಾರಂಭಿಸುವುದು ಮತ್ತು ಕೈಗೊಳ್ಳುವುದು;

(xi) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಅನುಸರಿಸಲು, ಉತ್ತೇಜಿಸಲು, ಸಾಧಿಸಲು ಮತ್ತು ಹೆಚ್ಚಿಸಲು ಅವಶ್ಯಕ ಅಥವಾ ಯುಕ್ತ ಕ್ರಮವನ್ನು ರೂಪಿಸುವುದು, ಕೈಗೊಳ್ಳುವುದು ಮತ್ತು ಕಾರ್ಯಗತಗೊಳಿಸುವುದು;

(xii) ಎಲ್ಲಾ ಜನರ ಜೀವನದ ಗುಣಮಟ್ಟವನ್ನು ಸುಧಾರಿಸುವ ಮತ್ತು ರಾಷ್ಟ್ರೀಯ ಅಭಿವೃದ್ಧಿಯನ್ನು ಸಾಧಿಸುವ ಸಾಮರ್ಥ್ಯಹೊಂದಿರುವಂಥ, ಸರ್ಕಾರವು ಅನುಮೋದಿಸಬಹುದಾದಂಥ ಯಾವುದೇ ಇತರ ಮೌಲ್ಯಯುತ ಧ್ಯೇಯೋದ್ದೇಶವನ್ನು ಅಥವಾ ಧ್ಯೇಯೋದ್ದೇಶಗಳನ್ನು ಅನುಸರಿಸುವುದು.

**8. ವಿಶ್ವವಿದ್ಯಾಲಯದ ಅಧಿಕಾರಗಳು.**– ವಿಶ್ವವಿದ್ಯಾಲಯವು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ಶಾಸನಗಳಲ್ಲಿ ಹೇಳಲಾದ ರೀತಿಯಲ್ಲಿ ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿರ್ಧರಿಸಬಹುದಾದಂಥ ಕ್ಯಾಂಪಸ್ಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದು, ನಿರ್ವಹಿಸುವುದು ಮತ್ತು ಅವುಗಳಿಗೆ ಮನ್ನಣೆ ನೀಡುವುದು;

(ii) ವಿಶ್ವವಿದ್ಯಾಲಯದ ಉದ್ದೇಶವನ್ನು ಕಾರ್ಯರೂಪಕ್ಕೆ ತರುವಲ್ಲಿ ಅಗತ್ಯವಾಗಬಹುದಾದಂಥ ಅಥವಾ ಕಾರ್ಯಸಾಧ್ಯವಾಗಬಹುದಾದಂಥ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು;

(iii) ಶಾಸನಗಳಲ್ಲಿ ಹೇಳಲಾದ ರೀತಿಯಲ್ಲಿ ಮತ್ತು ಷರತ್ತುಗಳಿಗೊಳಪಟ್ಟು ಪದವಿಗಳು ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರದಾನಮಾಡುವುದು;

(iv) ಶಾಸನಗಳನ್ವಯ ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿ ವೇತನಗಳು ಮತ್ತು ಬಹುಮಾನಗಳು, ಇತ್ಯಾದಿಗಳನ್ನು ಸ್ಥಾಪಿಸುವುದು ಮತ್ತು ನೀಡುವುದು;

(v) ಸಂದರ್ಭಾನುಸಾರ ಶಾಸನಗಳಲ್ಲಿ ಅಥವಾ ನಿಯಮಗಳಲ್ಲಿ ನಿಗದಿಪಡಿಸಬಹುದಾದಂಥ ಶುಲ್ಕಗಳು, ಬಿಲ್ಲುಗಳು, ಖರೀದಿ ಪಟ್ಟಿಗಳನ್ನು ಕೇಳಿಪಡೆದುಕೊಳ್ಳುವುದು ಮತ್ತು ಸ್ವೀಕರಿಸುವುದು ಹಾಗೂ ಚಾರ್ಜುಗಳನ್ನು ವಸೂಲು ಮಾಡುವುದು;

(vi) ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಪಠ್ಯೇತರ ಚಟುವಟಿಕೆಗಳಿಗೆ ಅವಕಾಶಗಳನ್ನು ಕಲ್ಪಿಸುವುದು;

(vii) ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಪ್ರಾದೇಶಿಕ ಕೇಂದ್ರಗಳ, ಅಧ್ಯಯನ ಕೇಂದ್ರಗಳ ಫ್ಯಾಕಲ್ಟಿ, ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವುದು;

(viii) ವಿಶ್ವವಿದ್ಯಾಲಯದ ಅಥವಾ ಒಂದು ಘಟಕ ಕಾಲೇಜಿನ ಅಥವಾ ಒಂದು ಪ್ರಾದೇಶಿಕ ಕೇಂದ್ರದ, ಅಥವಾ ಅಧ್ಯಯನ ಕೇಂದ್ರದ ಉದ್ದೇಶಕ್ಕಾಗಿ ಯಾವುದೇ ರೀತಿಯ ದೇಣಿಗೆಗಳು ಮತ್ತು ಕೊಡುಗೆಗಳನ್ನು ಸ್ವೀಕರಿಸುವುದು ಮತ್ತು ಕಂಪನಿ ನ್ಯಾಸ ಮತ್ತು ದತ್ತಿ ಆಸ್ತಿಗಳೂ ಸೇರಿದಂತೆ, ಯಾವುದೇ ಚರ ಅಥವಾ ಸ್ಥಿರ ಆಸ್ತಿಯನ್ನು ಅರ್ಜಿಸುವುದು, ಹೊಂದಿರುವುದು, ನಿರ್ವಹಿಸುವುದು, ನಡೆಸುವುದು ಮತ್ತು ಹಸ್ತಾಂತರ ಮಾಡುವುದು;

(ix) ಹಾಲ್‌ಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸಿಕೊಂಡು ಬರುವುದು ಹಾಗೂ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ ವಿದ್ಯಾರ್ಥಿಗಳಿಗೆ, ಸಿಬ್ಬಂದಿ ಮತ್ತು ಫ್ಯಾಕಲ್ಟಿಗಳಿಗೆ ವಸತಿ ಸ್ಥಳಗಳಿಗೆ ಮಾನ್ಯತೆ ನೀಡುವುದು;

(x) ವಸತಿಯ ಮೇಲ್ವಿಚಾರಣೆ ಮಾಡುವುದು ಮತ್ತು ನಿಯಂತ್ರಣ ಮಾಡುವುದು ಹಾಗೂ ವಿದ್ಯಾರ್ಥಿಗಳು ಮತ್ತು ಎಲ್ಲಾ ಪ್ರವರ್ಗಗಳ ಸಿಬ್ಬಂದಿಗಳಲ್ಲಿ ಶಿಸ್ತು ನಿಯಂತ್ರಣ ಮಾಡುವುದು ಮತ್ತು ನಡತೆ ಸಂಹಿತೆಯನ್ನು ರೂಪಿಸುವುದೂ ಒಳಗೊಂಡಂತೆ, ಅಂಥ ಸಿಬ್ಬಂದಿಗಳ ಸೇವಾಷರತ್ತುಗಳನ್ನು ನಿರೂಪಿಸುವುದು;

(xi) ಶೈಕ್ಷಣಿಕ, ಆಡಳಿತಾತ್ಮಕ ಮತ್ತು ಬೆಂಬಲ ಸಿಬ್ಬಂದಿಯ ಹುದ್ದೆಗಳನ್ನು ಮತ್ತು ಇತರ ಅವಶ್ಯ ಸ್ಥಾನಮಾನಗಳನ್ನು ಸೃಜಿಸುವುದು;

(xii) ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ಉದ್ದೇಶಗಳಿಗಾಗಿ ಇತರ ವಿಶ್ವವಿದ್ಯಾಲಯಗಳೊಡನೆ ಸಹಕರಿಸುವುದು ಮತ್ತು ಸಹಯೋಗ ಹೊಂದುವುದು;

(xiii) ದೂರ ಶಿಕ್ಷಣ ಪದ್ಧತಿಗೆ ಮತ್ತು ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯಕ್ರಮಗಳಿಗೆ ಸಂಬಂಧಪಟ್ಟಂತೆ ದೂರ ಶಿಕ್ಷಣವನ್ನು ಯಾವ ರೀತಿಯಲ್ಲಿ ಸಂಘಟಿಸಬಹುದು ಎಂಬುದಕ್ಕೆ ಉಪಬಂಧ ಕಲ್ಪಿಸುವುದು;

(xiv) ಫ್ಯಾಕಲ್ಟಿ, ಸಂಶೋಧನಾ ಅಸೋಸಿಯೇಟ್‌ಗಳು, ಸಿಬ್ಬಂದಿ ಮತ್ತಿತರ ನೌಕರರಿಗೆ ಪುನರ್ಮನನ ವ್ಯಾಸಂಗಕ್ರಮಗಳು, ಅಭಿಮುಖಿ ತರಬೇತಿ, ಕಾರ್ಯಾಗಾರಗಳು, ವಿಚಾರಗೋಷ್ಠಿಗಳು ಮತ್ತಿತರ ಕಾರ್ಯಕ್ರಮಗಳನ್ನು ಏರ್ಪಡಿಸುವುದು ಮತ್ತು ನಡೆಸುವುದು;

(xv) ಪ್ರಶಿಕ್ಷಣ ಪರಿಷತ್ತಿನ ಅನುಮೋದನೆಯೊಂದಿಗೆ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಪ್ರಾದೇಶಿಕ ಕೇಂದ್ರಗಳ ಮತ್ತು ಅಧ್ಯಯನ ಕೇಂದ್ರಗಳಿಗೆ ಪ್ರವೇಶಕ್ಕೆ ಮಾನಕ ಗುಣಮಟ್ಟಗಳನ್ನು ನಿರ್ಧರಿಸುವುದು;

(xvi) ವಿಶ್ವವಿದ್ಯಾಲಯದಲ್ಲಿ ಅಥವಾ ಘಟಕ ಕಾಲೇಜು, ಪ್ರಾದೇಶಿಕ ಕೇಂದ್ರ ಅಥವಾ ಅಧ್ಯಯನ ಕೇಂದ್ರದಲ್ಲಿ ಯಾವುದೇ ವ್ಯಾಸಂಗಕ್ರಮಕ್ಕೆ ಪ್ರವೇಶ ಪಡೆಯಲು ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ವಿಶೇಷ ಉಪಬಂಧಗಳನ್ನು ಕಲ್ಪಿಸುವುದು;

(xvii) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಕಾರ್ಯರೂಪಕ್ಕೆ ತರಲು ಅವಶ್ಯವಾಗಬಹುದಾದಂಥ ಇತರ ಎಲ್ಲಾ ಕ್ರಮಗಳನ್ನು ಅಥವಾ ಕಾರ್ಯಗಳನ್ನು, ಅವು ಮೇಲೆ ಹೇಳಿದ ಅಧಿಕಾರಗಳಿಗೆ ಪ್ರಾಸಂಗಿಕವಾಗಿರಲಿ ಅಥವಾ ಇಲ್ಲದಿರಲಿ, ಕೈಗೊಳ್ಳುವುದು;

(xviii) ಯುಜಿಸಿ, ಎಐಸಿಟಿಇ, ಎಂಸಿಐಗಳು ಅಥವಾ ಇತರ ನಿಯಂತ್ರಕ ಸಂಸ್ಥೆಗಳು ಒಳಗೊಂಡ ಶೈಕ್ಷಣಿಕ ಅಧ್ಯಯನವಾಗಲಿ ಅಥವಾ ಸಂಶೋಧನೆಯಾಗಿರಲಿ ಅಥವಾ ಇವೆರಡನ್ನು ಒಳಗೊಂಡಿರಲಿ, ಪದವಿ, ಸ್ನಾತಕೋತ್ತರ ಮತ್ತು ಡಾಕ್ಟರ್ ಮಟ್ಟದ ಪದವಿ ವ್ಯಾಸಂಗ ಕ್ರಮಗಳಿಗಾಗಿ ಅಂಥ ವ್ಯಾಸಂಗ ಕ್ರಮಗಳನ್ನು ಸ್ಥಾಪಿಸುವುದು, ಆದರೆ ವಿಶ್ವವಿದ್ಯಾಲಯವು ಡಿಪ್ಲೋಮಾಗಳು, ಪ್ರಮಾಣಪತ್ರ ವ್ಯಾಸಂಗ ಕ್ರಮಗಳು, ಅಲ್ಪಾವಧಿ ವ್ಯಾಸಂಗ ಕ್ರಮಗಳು ಮುಂತಾದವುಗಳನ್ನು ತನ್ನದೇ ಆದ ವಿಷಯಗಳಲ್ಲಿ ಪ್ರಾರಂಭಿಸಲು ಹಕ್ಕುಳ್ಳದ್ದಾಗಿರತಕ್ಕದ್ದು;

(xix) ಕಂಪೆನಿಯ ಚಟುವಟಿಕೆಗಳಿಂದ ವಿಶ್ವವಿದ್ಯಾಲಯದ ಶೈಕ್ಷಣಿಕ ಚಟುವಟಿಕೆಗಳನ್ನು ಸ್ಪಷ್ಟವಾಗಿ ಪ್ರತ್ಯೇಕವಾಗಿಡುವುದು;

(xx) ಫಿಲಂಗಳು, ಕ್ಯಾಸೆಟ್‌ಗಳು, ಧ್ವನಿಸುರುಳಿಗಳು, ದೃಶ್ಯಸುರುಳಿಗಳು, ಸಿ.ಡಿ.ಗಳು, ವಿ.ಸಿ.ಡಿ.ಗಳು, ಡಿ.ವಿ.ಡಿ.ಗಳು ಮತ್ತಿತರ ಮಾಧ್ಯಮಗಳೂ ಒಳಗೊಂಡಂತೆ ಬೋಧಕ ಸಾಮಗ್ರಿಗಳನ್ನು ಸಿದ್ಧಪಡಿಸುವುದಕ್ಕಾಗಿ ಅವಕಾಶ ಕಲ್ಪಿಸುವುದು;

(xxi) ಇತರ ವಿಶ್ವವಿದ್ಯಾಲಯಗಳ, ಸಂಸ್ಥೆಗಳ ಅಥವಾ ಇತರ ಉನ್ನತ ವಿದ್ಯಾಭ್ಯಾಸದ ಸ್ಥಳಗಳ ಪರೀಕ್ಷೆಗಳನ್ನು ಅಥವಾ ವ್ಯಾಸಂಗ ಅವಧಿಗಳನ್ನು (ಪೂರ್ಣವಾಗಿ ಅಥವಾ ಭಾಗಶ:) ವಿಶ್ವವಿದ್ಯಾಲಯದ ಪರೀಕ್ಷೆಗಳು ಅಥವಾ ವ್ಯಾಸಂಗ ಅವಧಿಗಳಿಗೆ ಸಮನೆಂದು ಮಾನ್ಯತೆ ನೀಡುವುದು ಮತ್ತು ಹಾಗೆ ನೀಡಿದ ಮಾನ್ಯತೆಗಳನ್ನು ಯಾವುದೇ ಸಮಯದಲ್ಲಿ ಹಿಂದಕ್ಕೆ ಪಡೆಯುವುದು;

(xxii) ಆಡಳಿತ ಮಂಡಳಿಯ ಅನುಮೋದನೆಯೊಡನೆ ವಿಶ್ವವಿದ್ಯಾಲಯದ ಉದ್ದೇಶಗಳಿಗಾಗಿ ವಿಶ್ವವಿದ್ಯಾಲಯದ ಸ್ವತ್ತುಗಳನ್ನು ಭದ್ರತೆಯಾಗಿ ನೀಡಿ ಅಥವಾ ಅನ್ಯಥಾ ಹಣವನ್ನು ಪಡೆಯುವುದು, ಸಂಗ್ರಹಿಸುವುದು, ಚಂದಾದಾರರಾಗುವುದು ಮತ್ತು ಸಾಲ ಪಡೆಯುವುದು;

(xxiii) ಮೇಲೆ ಹೇಳಿದಂತೆ ವಿಶ್ವವಿದ್ಯಾಲಯದ ಸಂಬಂಧಿಸಿದ ಅಥವಾ ಪ್ರಾಸಂಗಿಕವಾದ ಹೆಚ್ಚಿನ ಯಾವುದೇ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು.

**9. ವಿಶ್ವವಿದ್ಯಾಲಯವು ಎಲ್ಲಾ ವರ್ಗಗಳು, ಜಾತಿಗಳು, ಪಂಥ ಮತ್ತು ಲಿಂಗಭೇದವಿಲ್ಲದೆ ಎಲ್ಲರಿಗೂ ಮುಕ್ತವಾಗಿರತಕ್ಕದ್ದು.**- (1) ವಿಶ್ವವಿದ್ಯಾಲಯವು ವರ್ಗ, ಪಂಥ, ಲಿಂಗ, ಜನಾಂಗ ಅಥವಾ ಆರ್ಥಿಕ ಹಿನ್ನಲೆ ಯಾವುದೇ ಇರಲಿ ಎಲ್ಲಾ ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು:

ಪರಂತು, ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯಕ್ರಮಗಳಲ್ಲಿನ ಒಟ್ಟು ಸೀಟುಗಳ ಶೇಕಡ ಇಪ್ಪತ್ತೈದಕ್ಕಿಂತ ಕಡಿಮೆಯಿಲ್ಲದ ಸೀಟುಗಳನ್ನು ರಾಜ್ಯದಲ್ಲಿ ಅಧಿವಾಸಿಗಳಾಗಿರುವ ವಿದ್ಯಾರ್ಥಿಗಳಿಗೆ, ಅವರು ಪ್ರವೇಶಕ್ಕೆ ಇರುವ ಮಾನದಂಡಗಳನ್ನು ಪೂರೈಸುವುದಕ್ಕೆ ಒಳಪಟ್ಟು, ಕಾಯ್ದಿರಿಸತಕ್ಕದ್ದು:

ಮತ್ತು ಪರಂತು, ಅಂಥ ವಿದ್ಯಾರ್ಥಿಗಳು ಸಾಕಷ್ಟು ಸಂಖ್ಯೆಯಲ್ಲಿ ಲಭ್ಯವಿಲ್ಲದಿದ್ದಾಗ ಹಾಗೆ ಕಾಯ್ದಿರಿಸಿದ ಸೀಟುಗಳನ್ನು ಸಾಮಾನ್ಯ ವರ್ಗದ ಅಭ್ಯರ್ಥಿಗಳಿಂದ ಭರ್ತಿಮಾಡತಕ್ಕದ್ದು.

(2) ವಿಶ್ವವಿದ್ಯಾಲಯವು ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳ ಪ್ರವೇಶಕ್ಕಾಗಿ ವಿಶೇಷ ಉಪಬಂಧಗಳನ್ನು ರಚಿಸತಕ್ಕದ್ದು.

**10. ರಾಷ್ಟ್ರೀಯ ಅಧಿಮಾನ್ಯತೆ.–** ವಿಶ್ವವಿದ್ಯಾಲಯವು ಸಂಬಂಧಪಟ್ಟ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳಿಂದ ಅಧಿಮಾನ್ಯತೆಯನ್ನು ಕೋರತಕ್ಕದ್ದು.

**11. ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು.–** ಪ್ರಾಯೋಜಕ ಸಂಸ್ಥೆಯು ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದಂತೆ ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಇವುಗಳಲ್ಲಿ ಪ್ರತಿಯೊಂದನ್ನು ಪ್ರಾಯೋಜಕ ಸಂಸ್ಥೆಯು ತನ್ನ ವಿವೇಚನಾನುಸಾರ ಚಲಾಯಿಸಬಹುದು, ಎಂದರೆ:–

(i) ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಪುನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(ii) ವಿಶ್ವವಿದ್ಯಾಲಯದ ಪ್ರಥಮ ಪ್ರಬಂಧಕ ಮಂಡಳಿಯನ್ನು ರಚಿಸುವುದು;

(iii) ಪ್ರಬಂಧಕ ಮಂಡಳಿಯ ಅಧ್ಯಕ್ಷರನ್ನು ನಾಮನಿರ್ದೇಶಿಸುವುದು;

(iv) ಪ್ರಬಂಧಕ ಮಂಡಳಿಯ ಸದಸ್ಯರಾಗಿ ಮೂರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(v) ಆಡಳಿತ ಮಂಡಳಿಯ ಸದಸ್ಯರಾಗಿ ಇಬ್ಬರು ವ್ಯಕ್ತಿಗಳನ್ನು ನಾಮ ನಿರ್ದೇಶಿಸುವುದು;

(vi) ವಿಶ್ವವಿದ್ಯಾಲಯದ ದತ್ತಿ ನಿಧಿಗೆ ದೇಣಿಗೆ ನೀಡಲು ನಿಧಿ ಮೂಲಗಳನ್ನು ನಿರ್ಧರಿಸುವುದು;

(vii) ವಿಶ್ವವಿದ್ಯಾಲಯದ ಹಣದ ವಿನಿಯೋಗ ಮತ್ತು ವೆಚ್ಚ ಮಾಡುವುದನ್ನು ನಿರ್ಧರಿಸುವುದು;

(viii) ಈ ಅಧಿನಿಯಮದಲ್ಲಿ ಉಪಬಂಧಿಸಿರುವ ವಿಧಾನದಲ್ಲಿ ಪ್ರಬಂಧಕ ಮಂಡಳಿಯ ಸಭೆಯಲ್ಲಿಯ ವಿವಾದಗಳನ್ನು ಬಗೆಹರಿಸುವುದು;

## ಅಧ್ಯಾಯ – III

## ವಿಶ್ವವಿದ್ಯಾಲಯದ ಅಧಿಕಾರಿಗಳು

**12. ವಿಶ್ವವಿದ್ಯಾಲಯದ ಅಧಿಕಾರಿಗಳು.–** ಈ ಮುಂದಿನವರು ವಿಶ್ವವಿದ್ಯಾಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:–

(i) ಸಂದರ್ಶಕರು;

(ii) ಸಹ ಸಂದರ್ಶಕರು;

(iii) ಕುಲಾಧಿಪತಿಗಳು;

(iv) ಕುಲಪತಿಗಳು;

(v) ಸಹಕುಲಪತಿಗಳು;

(vi) ಕುಲಸಚಿವರು;

(vii) ಹಣಕಾಸು ಅಧಿಕಾರಿ; ಮತ್ತು

(viii) ಶಾಸನದ ಮೂಲಕ ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಘೋಷಿಸಬಹುದಾದಂಥ ಇತರ ಅಧಿಕಾರಿಗಳು.

**13. ಸಂದರ್ಶಕರು.–** (1) ಕರ್ನಾಟಕದ ರಾಜ್ಯಪಾಲರು ವಿಶ್ವವಿದ್ಯಾಲಯದ ಸಂದರ್ಶಕರಾಗಿರತಕ್ಕದ್ದು.

(2) ಸಂದರ್ಶಕರು ಹಾಜರಿದ್ದಾಗ, ಪದವಿಗಳನ್ನು ಮತ್ತು ಡಿಪ್ಲೋಮಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಸಂದರ್ಶಕರು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ವ್ಯವಹಾರಗಳಿಗೆ ಸಂಬಂಧಿಸಿದಂತೆ, ಯಾವುದೇ ಪತ್ರ ಅಥವಾ ಮಾಹಿತಿಯನ್ನು ತರಿಸಿಕೊಳ್ಳುವುದು.

(ii) ಸಂದರ್ಶಕರು, ಅವರು ಸ್ವೀಕರಿಸಿದ ಮಾಹಿತಿಯ ಆಧಾರದ ಮೇಲೆ ವಿಶ್ವವಿದ್ಯಾಲಯಗಳ ಯಾವುದೇ ಪ್ರಾಧಿಕಾರವು ಮಾಡಿದ ಯಾವುದೇ ಆದೇಶ, ನಡೆಸಿದ ವ್ಯವಹರಣೆಗಳು ಅಥವಾ ಕೈಗೊಂಡ ತೀರ್ಮಾನಗಳು, ಈ ಅಧಿನಿಯಮ, ವಿನಿಯಮಗಳು ಅಥವಾ ನಿಯಮಗಳಿಗೆ ಪೂರಕವಾಗಿಲ್ಲವೆಂದು ಮನಗಂಡರೆ ಅವರು ವಿಶ್ವವಿದ್ಯಾಲಯದ ಹಿತಾಸಕ್ತಿಯಿಂದ ತಾವು ಸೂಕ್ತವೆಂದು ಭಾವಿಸಬಹುದಾದಂಥ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಹಾಗೆ ಹೊರಡಿಸಿದ ನಿರ್ದೇಶನಗಳನ್ನು ಸಂಬಂಧಪಟ್ಟವರೆಲ್ಲರೂ ಪಾಲಿಸತಕ್ಕದ್ದು.

**14. ಸಹ ಸಂದರ್ಶಕರು.**– (1) ಕರ್ನಾಟಕ ಸರ್ಕಾರದ ಮಾನ್ಯ ಉನ್ನತ ಶಿಕ್ಷಣ ಸಚಿವರು ವಿಶ್ವವಿದ್ಯಾಲಯದ ಸಹ ಸಂದರ್ಶಕರಾಗಿರತಕ್ಕದ್ದು.

(2) ಸಹ ಸಂದರ್ಶಕರು, ಸಂದರ್ಶಕರ ಅನುಪಸ್ಥಿತಿಯಲ್ಲಿ ಪದವಿಗಳನ್ನು ಮತ್ತು ಡಿಪ್ಲೋಮಾಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**15. ಕುಲಾಧಿಪತಿ.**– (1) ಕುಲಾಧಿಪತಿಯವರನ್ನು ಪ್ರಾಯೋಜಕ ಸಂಸ್ಥೆಯು ನೇಮಿಸತಕ್ಕದ್ದು.

(2) ಪ್ರಾಯೋಜಕ ಸಂಸ್ಥೆಯ ಹಾಲಿ ಅಧ್ಯಕ್ಷರು ಮೊದಲನೇ ಕುಲಾಧಿಪತಿಗಳಾಗಿರತಕ್ಕದ್ದು, ಅವರು ತಮ್ಮ ಜೀವನಪರ್ಯಂತ ಕುಲಾಧಿಪತಿಗಳಾಗಿ ಪದಧಾರಣ ಮಾಡಿರತಕ್ಕದ್ದು.

(3) ತದನಂತರದ ಕುಲಾಧಿಪತಿಯವರು, ಅಂಥ ನೇಮಕಾತಿಯನ್ನು ಪರಿಗಣಿಸುವ ಕಾಲದಲ್ಲಿ ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ, ಪ್ರಾಯೋಜಕ ಸಂಸ್ಥೆಯ ಅಧ್ಯಕ್ಷರಾಗಿರತಕ್ಕದ್ದು ಅಥವಾ ಪ್ರಾಯೋಜಕ ಸಂಸ್ಥೆಯ ನಿರ್ದೇಶಕರೂ ಸೇರಿದಂತೆ ಇತರ ವ್ಯಕ್ತಿಯಾಗಿರತಕ್ಕದ್ದು.

(4) ಹಾಗೆ ನೇಮಕಗೊಂಡ ತದನಂತರದ ಕುಲಾಧಿಪತಿಯವರು ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ಪದಧಾರಣ ಮಾಡತಕ್ಕದ್ದು.

(5) ಕುಲಾಧಿಪತಿಯವರು ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ಶಾಸನಗಳ ಅಡಿಯಲ್ಲಿ ಅವರಿಗೆ ಪ್ರದಾನ ಮಾಡಬಹುದಾದಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು, ಅವುಗಳಲ್ಲಿ ಈ ಮುಂದಿನ ಅಧಿಕಾರಗಳು ಒಳಗೊಂಡಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುವುದು;

(ii) ಸಂದರ್ಶಕರ ಅಥವಾ ಸಹಸಂದರ್ಶಕರ ಅನುಪಸ್ಥಿತಿಯಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಘಟಿಕೋತ್ಸವಗಳಲ್ಲಿ ಅಧ್ಯಕ್ಷತೆಯನ್ನು ವಹಿಸುವುದು;

(iii) ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿಯ ಒಬ್ಬ ಸದಸ್ಯ ಮತ್ತು ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವುದು ಹಾಗೂ ಆಡಳಿತ ಮಂಡಳಿಯ ಎಲ್ಲಾ ಸಭೆಗಳಲ್ಲಿ ಹಾಜರಾಗುವುದು;

(iv) ಈ ಅಧಿನಿಯಮದ ಮತ್ತು ಶಾಸನಗಳ ಉಪಬಂಧಗಳಿಗೆ ಅನುಸಾರವಾಗಿ ಕುಲಪತಿಯವರನ್ನು ನೇಮಿಸುವುದು ಅಥವಾ ಪುನರ್ನೇಮಿಸುವುದು ಅಥವಾ ಅವರ ನೇಮಕಾತಿ ಅಂತ್ಯಗೊಳಿಸುವುದು;

(v) ಈ ಅಧಿನಿಯಮದ 16ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ನಾಮನಿರ್ದೇಶಕ ಸಮಿತಿಯ ಸದಸ್ಯರಾಗಿ ಒಬ್ಬ ವ್ಯಕ್ತಿಯನ್ನು ನಾಮನಿರ್ದೇಶನ ಮಾಡುವುದು;

(vi) ಸಹಕುಲಪತಿಯವರು, ಡೀನ್, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರುಗಳ ನೇಮಕಾತಿಯನ್ನು ಪೂರ್ವಾನುಮೋದಿಸುವುದು;

(vii) ಪ್ರಬಂಧಕ ಮಂಡಳಿಯ ಸದಸ್ಯರನ್ನಾಗಿ ಇಬ್ಬರು ಶಿಕ್ಷಣ ತಜ್ಞರನ್ನು ನಾಮನಿರ್ದೇಶಿಸುವುದು;

(viii) ಮೊದಲ ಸಹಕುಲಪತಿಯವರನ್ನು ಮತ್ತು ಹಣಕಾಸು ಅಧಿಕಾರಿಯನ್ನು ನೇಮಿಸುವುದು;

(ix) ಮೊದಲ ಆಡಳಿತ ಮಂಡಳಿ, ಹಣಕಾಸು ಸಮಿತಿ, ಸಂಶೋಧನಾ ಪರಿಷತ್ತು, ದೂರ ಶಿಕ್ಷಣ ಸಮಿತಿ ಹಾಗೂ ಪ್ರಶಿಕ್ಷಣ ಪರಿಷತ್ತುಗಳನ್ನು ರಚಿಸುವುದು;

(x) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ ಕಾರ್ಯಸೂಚಿ ವಿಷಯಗಳನ್ನು ಪೂರ್ವಾನುಮೋದಿಸುವುದು;

(xi) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ (ಪ್ರಬಂಧಕ ಮಂಡಳಿಯ ಸಭೆಯಲ್ಲಿ ಉಂಟಾದ ಸಂಘರ್ಷಗಳನ್ನು ಹೊರತುಪಡಿಸಿ) ಸಂಘರ್ಷಗಳನ್ನು ಪರಿಹರಿಸುವುದು.

(6) ಪದಾಧಿಕಾರಿ ಅಥವಾ ಪದಾಧಿಕಾರಿಗಳು ಅಥವಾ ಸಂಸ್ಥೆ ಅಥವಾ ಸಂಸ್ಥೆಗಳು ಮತ್ತು ವಿಶ್ವವಿದ್ಯಾಲಯದ ಯಾವುದೇ ಇತರ ಪದಾಧಿಕಾರಿ ಅಥವಾ ಸಂಸ್ಥೆಗಳ ನಡುವೆ ಸಂಘರ್ಷಗಳು ಉಂಟಾದಲ್ಲಿ ಆಗ ಆ ವಿವಾದವನ್ನು ಕುಲಾಧಿಪತಿಯವರ ಪರ್ಯಾಲೋಚನೆಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿವಾದದ ಸಂದರ್ಭದಲ್ಲಿ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**16. ಕುಲಪತಿ.**– (1) (2)ನೇ ಉಪಪ್ರಕರಣದ ಉಪಬಂಧಗಳಿಗೆ ಅನುಸಾರವಾಗಿ ನಾಮನಿರ್ದೇಶಕ ಸಮಿತಿಯು ಶಿಫಾರಸ್ಸು ಮಾಡಿದ ಮೂರು ವ್ಯಕ್ತಿಗಳ ಪೈಕಿ ಒಬ್ಬರನ್ನು ಕುಲಪತಿಯಾಗಿ, ಶಾಸನಗಳ ಮೂಲಕ ನಿಯಮಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರು ನೇಮಿಸತಕ್ಕದ್ದು.

(2) (1)ನೇ ಉಪಪ್ರಕರಣದಲ್ಲಿ ಹೇಳಿರುವ ನಾಮನಿರ್ದೇಶಕ ಸಮಿತಿಯಲ್ಲಿ ಈ ಮುಂದಿನ ವ್ಯಕ್ತಿಗಳು ಇರತಕ್ಕದ್ದು,–

(ಎ) ಕುಲಾಧಿಪತಿಯವರು ನಾಮನಿರ್ದೇಶಿಸಿದ ಒಬ್ಬ ವ್ಯಕ್ತಿ;

(ಬಿ) ಪ್ರಬಂಧಕ ಮಂಡಳಿಯು ನಾಮನಿರ್ದೇಶಿಸಿದ ಇಬ್ಬರು ವ್ಯಕ್ತಿಗಳು, ಇವರಲ್ಲಿ ಒಬ್ಬರನ್ನು ಪ್ರಬಂಧಕ ಮಂಡಳಿಯು ಸಮಿತಿಯ ಸಂಚಾಲಕರೆಂದು ನಾಮನಿರ್ದೇಶಿಸತಕ್ಕದ್ದು.

(ಸಿ) ಸಮಿತಿಯು, ಅರ್ಹತೆಯ ಆಧಾರದ ಮೇಲೆ ಕುಲಪತಿಯ ಹುದ್ದೆಗೆ ಸೂಕ್ತ ವ್ಯಕ್ತಿಗಳೆಂದು ಮೂರು ವ್ಯಕ್ತಿಗಳ ಹೆಸರುಗಳ ಪಟ್ಟಿಯನ್ನು ತಯಾರಿಸತಕ್ಕದ್ದು ಮತ್ತು ಅದನ್ನು ಪ್ರತಿಯೊಬ್ಬ ವ್ಯಕ್ತಿಯ ವಿದ್ಯಾರ್ಹತೆ ಮತ್ತಿತರ ವಿಶಿಷ್ಟ ಪ್ರಶಸ್ತಿಗಳನ್ನು ತಿಳಿಸುವ ಒಂದು ಸಂಕ್ಷಿಪ್ತ ವರದಿಯೊಂದಿಗೆ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು.

(3) ಕುಲಪತಿಯವರು ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಾಹಕ ಮತ್ತು ಶೈಕ್ಷಣಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣವನ್ನು ಚಲಾಯಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯದ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೊಳಿಸತಕ್ಕದ್ದು.

(4) ಶಿಕ್ಷಕರ ನೇಮಕಾತಿಯನ್ನು ಹೊರತುಪಡಿಸಿ ಕೂಡಲೇ ಕ್ರಮವನ್ನು ಕೈಗೊಳ್ಳಬೇಕಾದ ತುರ್ತು ಸ್ವರೂಪದ ಯಾವುದೇ ಇತರ ವಿಷಯಗಳಲ್ಲಿ ಮತ್ತು ಅದನ್ನು ಈ ಅಧಿನಿಯಮದ ಅಡಿಯಲ್ಲಿ ಅಥವಾ ವಿಶ್ವವಿದ್ಯಾಲಯವು ಇದಕ್ಕಾಗಿ ಅಧಿಕೃತಗೊಳಿಸಿದ್ದ ಯಾವೊಬ್ಬ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ಇತರ ನಿಕಾಯವು ಕೂಡಲೇ ಕ್ರಮಕೈಗೊಳ್ಳುವುದು ಸಾಧ್ಯವಿರದಿರುವಾಗ ಕುಲಪತಿಯವರು ತಾನು ಸೂಕ್ತವೆಂದು ಭಾವಿಸಬಹುದಾದಂತಹ ಕ್ರಮವನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆದು ಕೈಗೊಳ್ಳತಕ್ಕದ್ದು.

(5) ಕುಲಪತಿಯವರು, ಶಾಸನಗಳು ಅಥವಾ ನಿಯಮಗಳಲ್ಲಿ ಹೇಳಲಾದಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(6) ಕುಲಪತಿಯವರ ಸೇವೆಗಳನ್ನು ಆಡಳಿತ ಮಂಡಳಿಯ ಅನುಮೋದನೆಯೊಂದಿಗೆ, ಕುಲಾಧಿಪತಿಯು, ಸಹಜ ನ್ಯಾಯದ ತತ್ವಗಳನ್ನು ಅನುಸರಿಸಿದ ನಂತರ ಮತ್ತು ಶಿಸ್ತಿನ ಆಧಾರದ ಮೇಲೆ ಅಂತ್ಯಗೊಳಿಸುವ ಸಂದರ್ಭವೂ ಸೇರಿದಂತೆ ಪ್ರಕರಣದ ಬಗ್ಗೆ ಕುಲಪತಿಯು ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡಿದ ತರುವಾಯ ಆತನ ಸೇವೆಯನ್ನು ಕುಲಾಧಿಪತಿಯವರು ಅಂತ್ಯಗೊಳಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

(7) ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಸಂದರ್ಶಕರು, ಸಹಸಂದರ್ಶಕರು ಮತ್ತು ಕುಲಾಧಿಪತಿಯವರ ಅನುಪಸ್ಥಿತಿಯಲ್ಲಿ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**17. ಸಹಕುಲಪತಿ.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಮೂರು ಜನರನ್ನು ಮೀರದಂತೆ ಸಹಕುಲಪತಿಗಳನ್ನು ಶಾಸನಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**18. ವಿದ್ಯಾ ವಿಭಾಗಗಳ ಡೀನ್‌ಗಳು.–** ವಿದ್ಯಾ ವಿಭಾಗಗಳ ಡೀನ್‌ಗಳನ್ನು ಕುಲಪತಿಯವರು ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಶಾಸನಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**19. ಕುಲಸಚಿವರು.–**(1) ಕುಲಪತಿಯವರು, ಶಾಸನಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರ ಲಿಖಿತ ಅನುಮೋದನೆಯೊಡನೆ ಕುಲಸಚಿವರನ್ನು ನೇಮಿಸತಕ್ಕದ್ದು.

(2) ಶಾಸನಗಳಲ್ಲಿ ಪರಿಭಾಷಿಸಿರುವಂಥ ಎಲ್ಲಾ ಕರಾರುಗಳನ್ನು ವಿಶ್ವವಿದ್ಯಾಲಯದ ಪರವಾಗಿ ಕುಲಸಚಿವರು ಮಾಡಿಕೊಳ್ಳತಕ್ಕದ್ದು ಮತ್ತು ಅದಕ್ಕೆ ಸಹಿ ಹಾಕತಕ್ಕದ್ದು.

(3) ಕುಲಸಚಿವರು ವಿಶ್ವವಿದ್ಯಾಲಯದ ಪರವಾಗಿ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಕುಲಾಧಿಪತಿಯವರು ಮತ್ತು ಕುಲಪತಿಯವರು ಕಾಲದಿಂದ ಕಾಲಕ್ಕೆ ಅಗತ್ಯಪಡಿಸಬಹುದಾದಂಥ ಅಥವಾ ನಿಯಮಿಸಬಹುದಾದಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು ವಿಶ್ವವಿದ್ಯಾಲಯದ ದಾಖಲೆಗಳು ಮತ್ತು ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು, ಕುಲಪತಿಯವರು ಅಥವಾ ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿತಕ್ಕದ್ದು.

**20. ಹಣಕಾಸು ಅಧಿಕಾರಿ.–** ಹಣಕಾಸು ಅಧಿಕಾರಿಯು ಚಾರ್ಟರ್ಡ್ ಅಕೌಂಟೆಂಟ್ ಅಥವಾ ತತ್ಸಮಾನವಾದ ಪದವಿಯನ್ನು ಹೊಂದಿರತಕ್ಕದ್ದು ಮತ್ತು ಅವರನ್ನು ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು, ಕುಲಪತಿಯವರು, ಶಾಸನಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**21. ಇತರ ಅಧಿಕಾರಿಗಳು.–** ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ ನೇಮಕಾತಿಯ ವಿಧಾನ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅಧಿಕಾರಗಳು ಮತ್ತು ಕರ್ತವ್ಯಗಳು ಶಾಸನಗಳ ಮೂಲಕ ಹೇಳಲಾದಂತೆ ಇರತಕ್ಕದ್ದು.

## ಅಧ್ಯಾಯ – IV

## ವಿಶ್ವವಿದ್ಯಾಲಯದ ಪ್ರಾಧಿಕಾರಗಳು

**22. ವಿಶ್ವವಿದ್ಯಾಲಯದ ಪ್ರಾಧಿಕಾರಗಳು.–** ಈ ಮುಂದಿನವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:–

(i) ಪ್ರಬಂಧಕ ಮಂಡಳಿ;

(ii) ಆಡಳಿತ ಮಂಡಳಿ;

(iii) ಪ್ರಶಿಕ್ಷಣ ಪರಿಷತ್ತು;

(iv) ಸಂಶೋಧನಾ ಪರಿಷತ್ತು;

(v) ದೂರ ಶಿಕ್ಷಣ ಸಮಿತಿ;

(vi) ಹಣಕಾಸು ಸಮಿತಿ; ಮತ್ತು

(vii) ವಿಶ್ವವಿದ್ಯಾಲಯದ ಪ್ರಾಧಿಕಾರಗಳೆಂದು ಶಾಸನಗಳ ಮೂಲಕ ಘೋಷಿಸಬಹುದಾದಂತಹ ಇತರ ಪ್ರಾಧಿಕಾರಗಳು.

**23. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು.**– (1) ಪ್ರಬಂಧಕ ಮಂಡಳಿಯು ಈ ಮುಂದಿನವರುಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:–

| | | | |
|---|---|---|---|
| (i) | ಕುಲಾಧಿಪತಿಯವರು | – | ಅಧ್ಯಕ್ಷರು; |
| (ii) | ಕುಲಪತಿಯವರು | – | ಸದಸ್ಯರು; |
| (iii) | ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ; | – | ಸದಸ್ಯರು; |
| (iv) | ಸಂದರ್ಶಕರು ಶಿಫಾರಸ್ಸು ಮಾಡಿದ ಹೆಸರುಗಳ ಪಟ್ಟಿಯಿಂದ, ಆದಷ್ಟೂ ಒಬ್ಬ ಮಹಿಳೆಗೇ ಆದ್ಯತೆ ನೀಡಿ, ಆಯ್ಕೆ ಮಾಡಿದ ಒಬ್ಬ ಖ್ಯಾತ ಶಿಕ್ಷಣ ತಜ್ಞರು ಮತ್ತು ವಿದ್ವಾಂಸರು; | – | ಸದಸ್ಯರು; |
| (v) | ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಮೂರು ವ್ಯಕ್ತಿಗಳು; | – | ಸದಸ್ಯರು; |
| (vi) | ವಿಶ್ವವಿದ್ಯಾಲಯ ಅನುದಾನ ಆಯೋಗದಿಂದ ನಾಮನಿರ್ದೇಶಿತರಾದ ಒಬ್ಬ ಖ್ಯಾತ ಶಿಕ್ಷಣ ತಜ್ಞ; | – | ಸದಸ್ಯರು; |

(2) ಕುಲಸಚಿವರು ಮತ್ತು ಸಹ ಕುಲಪತಿಯವರು ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗೂ ಮತ ನೀಡಲು ಹಕ್ಕಿರದ ಆಹ್ವಾನಿತರಾಗಿರತಕ್ಕದ್ದು.

(3) ಪ್ರಬಂಧಕ ಮಂಡಳಿಯ ಸದಸ್ಯರ ಪದಾವಧಿ, ಸರ್ಕಾರದಿಂದ ನಾಮನಿರ್ದೇಶಿತರಾದ ಇಬ್ಬರು ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ನೇಮಕಾತಿ, ನವೀಕರಣ, ತೆಗೆದುಹಾಕುವುದು, ಪದಾವಧಿ ಮುಂತಾದವುಗಳು ಶಾಸನಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಾಧಿಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರ ಅನುಪಸ್ಥಿತಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದ ಯಾರಾದರೂ ಒಬ್ಬರು ಹಾಗೂ ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡಿರದ ಸಂದರ್ಭದಲ್ಲಿ, ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಿಗೆ, ಅಂಥ ಸಭೆಯಲ್ಲಿ ಹಾಜರಾಗುವ ಮತ್ತು ಮತದಾನ ನೀಡುವ ಮೂರು ಜನ ಸದಸ್ಯರು ಗಣಪೂರ್ತಿ (ಕೋರಂ) ಆಗಿರತಕ್ಕದ್ದು:

ಪರಂತು, ಪ್ರಬಂಧಕ ಮಂಡಳಿಯ ಯಾವುದೇ ಸಭೆಯ ಕೋರಂ ಪೂರ್ಣವಾಗಬೇಕಾದರೆ ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಿರುವುದು ಮತ್ತು ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ನಾಮನಿರ್ದೇಶಿತರು ಹಾಜರಾಗದೇ ಇದ್ದಾಗ ಕುಲಪತಿಯವರು ಹಾಜರಿರುವುದು ಯಾವಾಗಲೂ ಅವಶ್ಯವಾಗಿರತಕ್ಕದ್ದು.

(6) ಒಂದು ಕಾರ್ಯಸೂಚಿ ವಿಷಯದ ಪರವಾಗಿ ಕುಲಾಧಿಪತಿಯವರು ತಮ್ಮ ಸಮ್ಮತಿ ಸೂಚಕ ಮತ ನೀಡಿದಾಗ ಅದಕ್ಕನುಸಾರವಾಗಿ ಹೊರತು, ಪ್ರಬಂಧಕ ಮಂಡಳಿಯು ತನ್ನ ಸಭೆಯಲ್ಲಿ ಯಾವುದೇ ಕಾರ್ಯಸೂಚಿ ವಿಷಯದ ಸಂಬಂಧದಲ್ಲಿ ಯಾವುದೇ ನಿರ್ಣಯವನ್ನು ಅಂಗೀಕರಿಸತಕ್ಕದ್ದಲ್ಲ ಅಥವಾ ತೀರ್ಮಾನವನ್ನು ತೆಗೆದುಕೊಳ್ಳತಕ್ಕದ್ದಲ್ಲ.

(7) ಪ್ರಬಂಧಕ ಮಂಡಳಿಯ ಸಭೆಯಲ್ಲಿ ಭಿನ್ನಾಭಿಪ್ರಾಯ ಉಂಟಾದಲ್ಲಿ ಆ ವಿಷಯವನ್ನು ತೀರ್ಮಾನಕ್ಕಾಗಿ ಪ್ರಾಯೋಜಕ ಸಂಸ್ಥೆಗೆ ಕಳುಹಿಸತಕ್ಕದ್ದು ಮತ್ತು ಸದರಿ ವಿಷಯದ ಬಗ್ಗೆ ಪ್ರಾಯೋಜಕ ಸಂಸ್ಥೆಯ ನಿರ್ಣಯವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

(8) ಪ್ರಬಂಧಕ ಮಂಡಳಿಯು ವಿಶ್ವವಿದ್ಯಾಲಯದ ಪ್ರಧಾನ ಪ್ರಬಂಧಕ ಸಂಸ್ಥೆಯಾಗಿರತಕ್ಕದ್ದು ಮತ್ತು ಅದು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಕಮಾಡುವುದು;

(ii) ವಿಶ್ವವಿದ್ಯಾಲಯವು ಅನುಸರಿಸಬೇಕಾದ ಕಾರ್ಯನೀತಿಗಳನ್ನು ರಚಿಸುವುದು;

(iii) ಈ ಅಧಿನಿಯಮದ ಅಥವಾ ಶಾಸನಗಳ ಅಥವಾ ನಿಯಮಗಳ ಉಪಬಂಧಗಳಿಗೆ ಅನುಗುಣವಾಗಿ ಇರದ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ತೀರ್ಮಾನಗಳನ್ನು ಪುನರೀಕ್ಷಿಸುವುದು;

(iv) ವಿಶ್ವವಿದ್ಯಾಲಯದ ಆಯವ್ಯಯ ಮತ್ತು ವಾರ್ಷಿಕ ವರದಿಗಳನ್ನು ಅನುಮೋದಿಸುವುದು;

(v) ಹೊಸ ಅಥವಾ ಹೆಚ್ಚುವರಿ ಶಾಸನಗಳನ್ನು ರಚಿಸುವುದು ಅಥವಾ ಈಗಾಗಲೇ ಇರುವ ಶಾಸನಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವುದು ಅಥವಾ ನಿರಸನಗೊಳಿಸುವುದು;

(vi) ವಿಶ್ವವಿದ್ಯಾಲಯವನ್ನು ಸ್ವಯಂಸಮಾಪನಗೊಳಿಸುವ ನಿರ್ಧಾರವನ್ನು ತೆಗೆದುಕೊಳ್ಳುವುದು;

(vii) ಸರ್ಕಾರಕ್ಕೆ ಸಲ್ಲಿಸುವ ಪ್ರಸ್ತಾವಗಳನ್ನು ಅನುಮೋದಿಸುವುದು;

(viii) ವಿಶ್ವವಿದ್ಯಾಲಯದ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕೆ ಅಪೇಕ್ಷಣೀಯವೆಂದು ಕಂಡುಬರುವಂಥ ತೀರ್ಮಾನಗಳನ್ನು ಮತ್ತು ಕ್ರಮಗಳನ್ನು ಕೈಗೊಳ್ಳುವುದು.

(9) ಪ್ರಬಂಧಕ ಮಂಡಳಿಯು ಶಾಸನಗಳಲ್ಲಿ ನಿಯಮಿಸಬಹುದಂಥ ಸಮಯ ಮತ್ತು ಸ್ಥಳದಲ್ಲಿ ಸಭೆ ಸೇರತಕ್ಕದ್ದು.

**24. ಆಡಳಿತ ಮಂಡಳಿ.**– (1) ಆಡಳಿತ ಮಂಡಳಿಯು, ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿ;

(ii) ಸಹಕುಲಪತಿ;

(iii) ಕುಲಸಚಿವರು;

(iv) ಪ್ರಾಯೋಜಕ ಸಂಸ್ಥೆಯ ಇಬ್ಬರು ನಾಮನಿರ್ದೇಶಿತರು;

(v) ಕುಲಪತಿಗಳು ನಾಮನಿರ್ದೇಶಿಸಬಹುದಾದಂಥ ವಿದ್ಯಾವಿಭಾಗಗಳ ಇಬ್ಬರು ಡೀನ್‌ಗಳು;

(2) ಕುಲಪತಿಯವರು ಆಡಳಿತ ಮಂಡಳಿಯ ಅಧ್ಯಕ್ಷರಾಗಿರತಕ್ಕದ್ದು ಮತ್ತು ಕುಲಸಚಿವರು ಆಡಳಿತ ಮಂಡಳಿಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ಆಡಳಿತ ಮಂಡಳಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳು ಶಾಸನಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ಆಡಳಿತ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು ಹಾಗೂ ಕುಲಪತಿಯವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೇ ಇದ್ದ ಸಂದರ್ಭದಲ್ಲಿ ಇತರ ಯಾವುದೇ ಸದಸ್ಯರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ಆಡಳಿತ ಮಂಡಳಿಯ ಸಭೆಯಲ್ಲಿ ಯಾವುದೇ ವಿಷಯವನ್ನು ಕುರಿತು ಭಿನ್ನಾಭಿಪ್ರಾಯ ಉಂಟಾದಲ್ಲಿ ಸದರಿ ವಿಷಯವನ್ನು ಕುಲಾಧಿಪತಿಯವರಿಗೆ ತೀರ್ಮಾನಕ್ಕಾಗಿ ಕಳುಹಿಸತಕ್ಕದ್ದು ಮತ್ತು ಆ ವಿಷಯದ ಬಗ್ಗೆ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**25. ಪ್ರಶಿಕ್ಷಣ ಪರಿಷತ್ತು.**– (1) ಪ್ರಶಿಕ್ಷಣ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಕಾರ್ಯದರ್ಶಿಗಳು

(iv) ಶಾಸನಗಳಲ್ಲಿ ನಿರ್ದಿಷ್ಟಪಡಿಸಬಹುದಾದಂಥ ಇತರ ಸದಸ್ಯರು.

(2) ಪ್ರಶಿಕ್ಷಣ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ವಿದ್ಯಾ ವಿಷಯಕ ಸಂಸ್ಥೆಯಾಗಿರತಕ್ಕದ್ದು ಮತ್ತು ಈ ಅಧಿನಿಯಮದ ಉಪಬಂಧಗಳು, ಶಾಸನಗಳು, ವಿನಿಯಮಗಳು ಹಾಗೂ ನಿಯಮಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**26. ಸಂಶೋಧನಾ ಪರಿಷತ್ತು.**– (1) ಸಂಶೋಧನಾ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಸಂಶೋಧನಾ ಸಮಿತಿಯಾಗಿರತಕ್ಕದ್ದು ಹಾಗೂ ಸಂಶೋಧನಾ ಕ್ಷೇತ್ರಗಳಲ್ಲಿ ಯಾವುದಕ್ಕೆ ಆದ್ಯತೆಯನ್ನು ನೀಡಲೇಬೇಕೆಂಬುದೂ ಒಳಗೊಂಡಂತೆ ವಿಶ್ವವಿದ್ಯಾಲಯವು ಯಾವ ರೀತಿಯ ಸಂಶೋಧನೆ ಕೈಗೊಳ್ಳಬೇಕೆಂಬ ಬಗ್ಗೆ ಒಂದು ವ್ಯಾಪಕವಾದ ಪರಿಪೂರ್ಣ ಭವಿಷ್ಯದ್ ದೃಷ್ಟಿಯನ್ನು ಒದಗಿಸತಕ್ಕದ್ದು. ಸಂಶೋಧನಾ ಪರಿಷತ್ತು ಈ ಅಧಿನಿಯಮದ ಉಪಬಂಧಗಳು, ಶಾಸನಗಳು, ವಿನಿಯಮಗಳು ಮತ್ತು ನಿಯಮಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಸಂಶೋಧನಾ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ಸಂಶೋಧನಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಸಂಶೋಧನಾ ಡೀನ್ – ಕಾರ್ಯದರ್ಶಿಗಳು

(iv) ಎಲ್ಲಾ ವಿದ್ಯಾ ವಿಭಾಗದ ಡೀನ್‌ಗಳು – ಸದಸ್ಯರು

(v) ಶಾಸನಗಳಲ್ಲಿ ನಿರ್ದಿಷ್ಟಪಡಿಸಬಹುದಾದಂಥ ಇತರ ಸದಸ್ಯರು.

**27. ದೂರ ಶಿಕ್ಷಣ ಸಮಿತಿ.**– (1) ದೂರ ಶಿಕ್ಷಣ ಸಮಿತಿಯು ವಿಶ್ವವಿದ್ಯಾಲಯದ ಪ್ರಧಾನ ಕ್ಯಾಂಪಸಿಗೆ ಆಗಮಿಸಬಹುದಾದ ಅಥವಾ ಆಗಮಿಸದೇ ಇರಬಹುದಾದ ಬಹುಸಂಖ್ಯಾತ ವಿದ್ಯಾ ಜಿಜ್ಞಾಸುಗಳಿಗೆ ಸಹವರ್ತಿ ಸಂಶೋಧನೆ ಕೆಲಸದ ಸಮೇತ ದೂರ ಶಿಕ್ಷಣವನ್ನು ಒದಗಿಸುವ ಪ್ರಧಾನ ಸಂಸ್ಥೆಯಾಗಿರತಕ್ಕದ್ದು. ದೂರ ಶಿಕ್ಷಣ ಸಮಿತಿಯು, ಈ ಅಧಿನಿಯಮದ ಉಪಬಂಧಗಳು, ಶಾಸನಗಳು, ವಿನಿಯಮಗಳು ಮತ್ತು ನಿಯಮಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ದೂರ ಶಿಕ್ಷಣ ಯೋಜನೆಗಳು/ಕಾರ್ಯನೀತಿಗಳ ವಿಷಯಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ದೂರ ಶಿಕ್ಷಣ ಸಮಿತಿಯು, ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ :–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಕಾರ್ಯದರ್ಶಿ

(iv) ಶಾಸನಗಳಲ್ಲಿ ನಿರ್ದಿಷ್ಟಪಡಿಸಬಹುದಾದಂಥ ಇತರ ಸದಸ್ಯರು.

**28. ಹಣಕಾಸು ಸಮಿತಿ.**– (1) ಹಣಕಾಸು ಸಮಿತಿಯು, ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು ಅಥವಾ ಅವರ ನಾಮನಿರ್ದೇಶಿತರು – ಅಧ್ಯಕ್ಷರು

(ii) ಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಸದಸ್ಯರು

(iv) ಹಣಕಾಸು ಅಧಿಕಾರಿ – ಕಾರ್ಯದರ್ಶಿ

(v) ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು – ಸದಸ್ಯರು; ಮತ್ತು

(vi) ಶಾಸನಗಳಲ್ಲಿ ನಿರ್ದಿಷ್ಟಪಡಿಸಬಹುದಾದಂಥ ಇತರ ಸದಸ್ಯರು.

(2) ಹಣಕಾಸು ಸಮಿತಿಯು, ಹಣಕಾಸಿನ ವಿಷಯಗಳ ಜವಾಬ್ದಾರಿಯನ್ನು ಹೊಂದಿರುವ ವಿಶ್ವವಿದ್ಯಾಲಯದ ಪ್ರಧಾನ ಹಣಕಾಸು ಸಂಸ್ಥೆಯಾಗಿರತಕ್ಕದ್ದು ಹಾಗೂ ಅದು ಈ ಅಧಿನಿಯಮ, ನಿಯಮಗಳು ಮತ್ತು ಶಾಸನಗಳ ಉಪಬಂಧಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಹಣಕಾಸು ವಿಷಯಗಳ ಸಮನ್ವಯಗೊಳಿಸತಕ್ಕದ್ದು ಮತ್ತು ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**29. ಇತರ ಪ್ರಾಧಿಕಾರಗಳು.**– ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ರಚನೆ, ಅಧಿಕಾರಗಳು ಹಾಗೂ ಪ್ರಕಾರ್ಯಗಳು ಶಾಸನಗಳಿಂದ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

**30. ಖಾಲಿ ಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ.**– ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಕಾರ್ಯ ಅಥವಾ ವ್ಯವಹರಣೆಗಳು ಕೇವಲ ಅದರಲ್ಲಿ ಯಾವುದೇ ಖಾಲಿ ಸ್ಥಾನ ಇದೆ ಎಂಬ ಕಾರಣದಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣದಿಂದ ಅಸಿಂಧುವಾಗತಕ್ಕದ್ದಲ್ಲ.

**31. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು.**– (1) ಯಾವುವೇ ಕಾರ್ಯಸೂಚಿ ವಿಷಯಗಳನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆಯದೇ ಪ್ರಬಂಧಕ ಮಂಡಳಿಯ ಅಥವಾ ಆಡಳಿತ ಮಂಡಳಿಯ ಅಥವಾ ಯಾವುದೇ ಸಮಿತಿಗಳ ಸಭೆಯ ಇತರ ಕಾರ್ಯಸೂಚಿ ವಿಷಯಗಳಲ್ಲಿ ಚರ್ಚೆಗಾಗಿ ಸೇರಿಸತಕ್ಕದ್ದಲ್ಲ ಅಥವಾ ಚರ್ಚೆಗೆ ತೆಗೆದುಕೊಳ್ಳತಕ್ಕದ್ದಲ್ಲ ಮತ್ತು ತೀರ್ಮಾನಿಸತಕ್ಕದ್ದಲ್ಲ.

(2) ಈ ಉಪಬಂಧವನ್ನು ಪಾಲಿಸದ ಯಾವುದೇ ಸಂದರ್ಭದಲ್ಲಿ ಕುಲಾಧಿಪತಿಯವರು ವಿಶ್ವವಿದ್ಯಾಲಯದ ಯಾವುದೇ ಪದಾಧಿಕಾರಿ ಅಥವಾ ಪದಾಧಿಕಾರಿಗಳು ಅಥವಾ ಸಂಸ್ಥೆ ಅಥವಾ ಸಂಸ್ಥೆಗಳು ಈ ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ತೆಗೆದುಕೊಂಡ ಎಲ್ಲಾ ತೀರ್ಮಾನಗಳನ್ನು ವಿಪರ್ಯಯಗೊಳಿಸುವ ಮೂಲಕ ಪರಿಹಾರ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಅಧಿಕಾರವನ್ನು ಹೊಂದಿರತಕ್ಕದ್ದು ಮತ್ತು ಹಾಗೆ ಪರಿಹಾರ ಕ್ರಮ ಕೈಗೊಂಡ ಮೇಲೆ ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ವಿಶ್ವವಿದ್ಯಾಲಯದ ಪದಾಧಿಕಾರಿ ಅಥವಾ ಪದಾಧಿಕಾರಿಗಳು ಅಥವಾ ಸಂಸ್ಥೆ ಅಥವಾ ಸಂಸ್ಥೆಗಳು ಕೈಗೊಂಡಿದ್ದ ಅಂಥ ಎಲ್ಲಾ ಕ್ರಮಗಳು, ಮೊದಲಿನಿಂದಲೂ ಶೂನ್ಯ ಮತ್ತು ಅಕೃತ ಎಂದು ಭಾವಿಸತಕ್ಕದ್ದು ಹಾಗೂ ತತ್ಪರಿಣಾಮವಾಗಿ, ಉಪಬಂಧ ಪಾಲಿಸದೇ ಇದ್ದ ವಿಷಯ ಅಥವಾ ನಿರ್ಧಾರದ ಸಂಬಂಧದಲ್ಲಿ ಅದಕ್ಕೆ ಮುಂಚೆ ಇದ್ದ ವಸ್ತುಸ್ಥಿತಿಯೇ ಮುಂದುವರಿಯತಕ್ಕದ್ದು.

## ಅಧ್ಯಾಯ – V

## ಶಾಸನಗಳು ಮತ್ತು ವಿನಿಯಮಗಳು

**32. ಶಾಸನಗಳು.**– ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಶಾಸನಗಳು, ವಿಶ್ವವಿದ್ಯಾಲಯಕ್ಕೆ ಹಾಗೂ ಸಿಬ್ಬಂದಿಗೆ ಸಂಬಂಧಪಟ್ಟ ಯಾವುವೇ ವಿಷಯಗಳಿಗೆ ಸಂಬಂಧಪಟ್ಟಂತೆ ಈ ಮುಂದಿನಂತೆ ಉಪಬಂಧ ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಕಾರ್ಯಕಲಾಪಗಳನ್ನು ನಡೆಸುವ ಮತ್ತು ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸದಿರುವ ಸಂಸ್ಥೆಗಳ ರಚನೆಯ ಕಾರ್ಯವಿಧಾನ;

(ii) ಶಾಶ್ವತ ಶಾಸನಬದ್ಧ ದತ್ತಿ ನಿಧಿ, ವಿಶ್ವವಿದ್ಯಾಲಯ ದತ್ತಿ ನಿಧಿ, ಸಾಮಾನ್ಯ ನಿಧಿ ಹಾಗೂ ಅಭಿವೃದ್ಧಿ ನಿಧಿಗಳ ನಿರ್ವಹಣೆ;

(iii) ಕುಲಪತಿಗಳು, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರ ನೇಮಕಾತಿಯ ನಿಬಂಧನೆಗಳು ಹಾಗೂ ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಪ್ರಕಾರ್ಯಗಳು;

(iv) ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ, ಶಿಕ್ಷಕರ ಮತ್ತು ನೌಕರರ ನೇಮಕಾತಿ ವಿಧಾನ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(v) ವಿಶ್ವವಿದ್ಯಾಲಯ ಹಾಗೂ ಅದರ ಅಧಿಕಾರಿಗಳು, ವಿದ್ಯಾವಿಭಾಗದ (ಫ್ಯಾಕಲ್ಟಿ) ಸದಸ್ಯರು, ನೌಕರರು ಹಾಗೂ ವಿದ್ಯಾರ್ಥಿಗಳ ನಡುವಿನ ವಿವಾದಗಳನ್ನು ಪರಿಹರಿಸುವ ವಿಧಾನ;

(vi) ವಿಭಾಗಗಳು ಮತ್ತು ವಿದ್ಯಾವಿಭಾಗಗಳ (ಫ್ಯಾಕಲ್ಟಿಗಳ) ಸೃಜನೆ, ರದ್ಧತಿ ಅಥವಾ ಪುನಾರಚನೆ;

(vii) ಇತರ ವಿಶ್ವವಿದ್ಯಾಲಯಗಳು ಮತ್ತು ಉನ್ನತ ಶಿಕ್ಷಣ ಸಂಸ್ಥೆಗಳ ಜೊತೆಯಲ್ಲಿ ಸಹಕರಿಸಬೇಕಾದ ರೀತಿ;

(viii) ಗೌರವ ಪದವಿಗಳ ನೀಡಿಕೆಯ ಕಾರ್ಯವಿಧಾನ;

(ix) ವಿದ್ಯಾರ್ಥಿವೇತನ ಮತ್ತು ಫ್ರೀಷಿಪ್ ಮಂಜೂರಾತಿಗೆ ಸಂಬಂಧಿಸಿದ ಉಪಬಂಧಗಳು;

(x) ವಿವಿಧ ವ್ಯಾಸಂಗ ಕ್ರಮಗಳಲ್ಲಿನ ಸೀಟುಗಳ ಸಂಖ್ಯೆ ಮತ್ತು ಅಂಥ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಕಾರ್ಯವಿಧಾನ;

(xi) ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಶುಲ್ಕ;

(xii) ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಫ್ರೀಷಿಪ್, ಪದಕಗಳು ಹಾಗೂ ಬಹುಮಾನಗಳನ್ನು ಪ್ರಾರಂಭಿಸುವುದು;

(xiii) ಹುದ್ದೆಗಳ ಸೃಜನೆ ಮತ್ತು ರದ್ಧತಿಯ ಕಾರ್ಯವಿಧಾನ;

(xiv) ನಿಯಮಿಸಬಹುದಾದ ಇತರ ವಿಷಯಗಳು.

33. **ಶಾಸನಗಳ ರಚನೆ ವಿಧಾನ.–** (1) ಆಡಳಿತ ಮಂಡಳಿಯು ರಚಿಸಿದ ಮೊದಲ ಶಾಸನಗಳನ್ನು ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಆಡಳಿತ ಮಂಡಳಿಯು ಸಲ್ಲಿಸಿದ ಮೊದಲ ಶಾಸನಗಳನ್ನು ಪ್ರಬಂಧಕ ಮಂಡಳಿಯು ಪರಿಗಣಿಸತಕ್ಕದ್ದು ಹಾಗೂ ತಾನು ಅವಶ್ಯವೆಂದು ಭಾವಿಸಬಹುದಾಂಥ ಮಾರ್ಪಾಡುಗಳು, ಯಾವುದಾದರು ಇದ್ದಲ್ಲಿ, ಅವುಗಳೊಡನೆ ತನ್ನ ಅನುಮೋದನೆಯನ್ನು ನೀಡತಕ್ಕದ್ದು.

(3) ಪ್ರಬಂಧಕ ಮಂಡಳಿಯು ಶಾಸನಗಳ ಅನುಮೋದನೆಯ ವಿಷಯದಲ್ಲಿ ಮೂರು ತಿಂಗಳೊಳಗೆ ಯಾವುದೇ ತೀರ್ಮಾನವನ್ನು ಕೈಗೊಳ್ಳಲು ತಪ್ಪಿದಲ್ಲಿ ಅದನ್ನು ಸಂದರ್ಶಕರು ಅನುಮೋದಿಸಿದ್ದಾರೆಂದು ಎಂದು ಭಾವಿಸತಕ್ಕದ್ದು.

(4) ವಿಶ್ವವಿದ್ಯಾಲಯವು, ಪ್ರಬಂಧಕ ಮಂಡಳಿಯು ಅನುಮೋದಿಸಿದ ಮೊದಲ ಶಾಸನಗಳನ್ನು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ಪ್ರಕಟಿಸತಕ್ಕದ್ದು ಮತ್ತು ತದನಂತರ ಮೊದಲ ಶಾಸನವು ಅದರ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**34. ಶಾಸನಗಳ ತಿದ್ದುಪಡಿಯ ಅಧಿಕಾರ.–** ಪ್ರಬಂಧಕ ಮಂಡಳಿಯು ಹೊಸ ಅಥವಾ ಹೆಚ್ಚಿನ ಶಾಸನಗಳನ್ನು ರಚಿಸಬಹುದು ಅಥವಾ ಶಾಸನಗಳ ತಿದ್ದುಪಡಿ ಮಾಡಬಹುದು ಅಥವಾ ಅವನ್ನು ನಿರಸನಗೊಳಿಸಬಹುದು.

**35. ವಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ವಿನಿಯಮಗಳು ಈ ಮುಂದಿನ ಯಾವುದೇ ಅಥವಾ ಎಲ್ಲಾ ವಿಷಯಗಳಿಗೆ ಉಪಬಂಧಗಳನ್ನು ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ವಿದ್ಯಾರ್ಥಿ ಪಟ್ಟಿಯಲ್ಲಿ ಅವರುಗಳ ದಾಖಲಾತಿ ಹಾಗೂ ಮುಂದುವರಿಕೆ;

(ii) ವಿಶ್ವವಿದ್ಯಾಲಯದ ಎಲ್ಲಾ ಪದವಿಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ನಿಗದಿಪಡಿಸತಕ್ಕ ವ್ಯಾಸಂಗ ಕ್ರಮಗಳು;

(iii) ಪದವಿಗಳ ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರದಾನ;

(iv) ಸಂಶೋಧನಾ ವೇತನ (ಫೆಲೋಶಿಪ್), ವಿದ್ಯಾರ್ಥಿವೇತನ, ಶಿಷ್ಯವೇತನ, ಪದಕಗಳು ಮತ್ತು ಬಹುಮಾನಗಳನ್ನು ನೀಡಲು ಷರತ್ತುಗಳು;

(v) ಪರೀಕ್ಷೆಗಳನ್ನು ನಡೆಸುವುದು ಹಾಗೂ ಪರೀಕ್ಷೆ ನಡೆಸುವ ಸಂಸ್ಥೆಗಳು, ಪರೀಕ್ಷಕರು, ಪರೀಕ್ಷಾ ಮೇಲ್ವಿಚಾರಕರು, ಟ್ಯಾಬ್ಯುಲೇಟರ್‌ಗಳು ಮತ್ತು ಮಾಡರೇಟರ್‌ಗಳ ನೇಮಕಾತಿಯ ವಿಧಾನ ಮತ್ತು ನೇಮಕಾತಿ ಷರತ್ತುಗಳು;

(vi) ವಿಶ್ವವಿದ್ಯಾಲಯದ ಪರೀಕ್ಷೆಗಳಿಗೆ, ಪದವಿಗಳಿಗೆ ಹಾಗೂ ಇತರ ಶೈಕ್ಷಣಿಕ ಪ್ರಶಸ್ತಿಗಳಿಗೆ ಪ್ರವೇಶಕ್ಕೆ ವಿಧಿಸತಕ್ಕ ಶುಲ್ಕ;

(vii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನಲ್ಲಿ ವಿದ್ಯಾರ್ಥಿಗಳ ನಿವಾಸಕ್ಕಾಗಿ ಷರತ್ತುಗಳು;

(viii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಶಿಸ್ತು ಪಾಲನೆ;

(ix) ಈ ಅಧಿನಿಯಮದ ಅಡಿಯಲ್ಲಿನ ಶಾಸನಗಳಲ್ಲಿ ಉಪಬಂಧಿಸಬಹುದಾಂಥ ಇತರ ಎಲ್ಲಾ ವಿಷಯಗಳು.

**36. ವಿನಿಯಮಗಳ ರಚನೆ ವಿಧಾನ.–** ವಿನಿಯಮಗಳನ್ನು ಪ್ರಶಿಕ್ಷಣ ಪರಿಷತ್ತು ರಚಿಸತಕ್ಕದ್ದು ಹಾಗೂ ಆಡಳಿತ ಮಂಡಳಿಯು ಅನುಮೋದಿಸತಕ್ಕದ್ದು.

**37. ವಿನಿಯಮಗಳ ತಿದ್ದುಪಡಿಗೆ ಅಧಿಕಾರ.–** ಪ್ರಶಿಕ್ಷಣ ಪರಿಷತ್ತು, ಆಡಳಿತ ಮಂಡಳಿಯ ಅನುಮೋದನೆಯೊಡನೆ ಹೊಸ ವಿನಿಯಮಗಳನ್ನು ಅಥವಾ ಹೆಚ್ಚುವರಿ ವಿನಿಯಮಗಳನ್ನು ರಚಿಸಬಹುದು ಅಥವಾ ವಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ನಿರಸನಗೊಳಿಸಬಹುದು.

**38. ಶುಲ್ಕ ನಿಯಂತ್ರಣ ಸಮಿತಿ.–** (1) ಪ್ರಬಂಧಕ ಮಂಡಳಿಯು ರಚಿಸಿದ ಒಂದು ಶುಲ್ಕ ನಿಯಂತ್ರಣ ಸಮಿತಿಯು ಇರತಕ್ಕದ್ದು, ಇದರಲ್ಲಿ ಉನ್ನತ ಶಿಕ್ಷಣದ ಪ್ರಭಾರದಲ್ಲಿರುವ ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ ಅಥವಾ ಅವರ ನಾಮನಿರ್ದೇಶಿತರು ಒಬ್ಬ ಸದಸ್ಯರಾಗಿರತಕ್ಕದ್ದು ಮತ್ತು ಕುಲಾಧಿಪತಿಯವರು ಸಮಿತಿಯ ಅಧ್ಯಕ್ಷರಾಗಿರತಕ್ಕದ್ದು ಹಾಗೂ ಅಧ್ಯಕ್ಷರು ನಾಮನಿರ್ದೇಶಿಸಿದ ಇತರ ಮೂರು ಜನ ಸದಸ್ಯರು ಇರತಕ್ಕದ್ದು.

(2) ಸಮಿತಿಯು ಎಲ್ಲಾ ಶೈಕ್ಷಣಿಕ ಕಾರ್ಯಕ್ರಮಗಳಿಗೆ ಶುಲ್ಕದ ಸ್ವರೂಪವನ್ನು ನಿಗದಿಪಡಿಸುವುದಕ್ಕಾಗಿ ಶಾಸನಗಳಿಗೆ ಸುಸಂಗತವಾದ ಕಾರ್ಯ ವಿಧಾನ ಮತ್ತು ಪದ್ಧತಿಗಳನ್ನು ರೂಪಿಸತಕ್ಕದ್ದು.

(3) ಸಮಿತಿಯು ಹಾಗೆ ಪ್ರಸ್ತಾಪಿಸಿದ ಶುಲ್ಕದ ಸ್ವರೂಪವನ್ನು ಪ್ರಬಂಧಕ ಮಂಡಳಿಯ ಮುಂದೆ ಅದರ ಒಪ್ಪಿಗೆಗಾಗಿ ಮಂಡಿಸತಕ್ಕದ್ದು.

## ಅಧ್ಯಾಯ – VI

### ಸಂಕೀರ್ಣ

**39. ನೌಕರರ ಸೇವಾ ಷರತ್ತುಗಳು.–** (1) ಪ್ರತಿಯೊಬ್ಬ ನೌಕರನು ಲಿಖಿತ ಕರಾರನ್ನು ಬರೆದುಕೊಟ್ಟು ನೇಮಕಗೊಳ್ಳತಕ್ಕದ್ದು ಮತ್ತು ಅದನ್ನು ವಿಶ್ವವಿದ್ಯಾಲಯದಲ್ಲಿ ಇಟ್ಟುಕೊಳ್ಳತಕ್ಕದ್ದು ಹಾಗೂ ಅದರ ಪ್ರತಿಯನ್ನು ಸಂಬಂಧಪಟ್ಟ ನೌಕರನಿಗೆ ನೀಡತಕ್ಕದ್ದು.

(2) ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಶಾಸನಗಳಲ್ಲಿ ನಿಯಮಿಸಬಹುದಾದ ಕಾರ್ಯವಿಧಾನಗಳ ಅನುಸಾರವಾಗಿ ತೆಗೆದುಕೊಳ್ಳತಕ್ಕದ್ದು.

(3) ವಿಶ್ವವಿದ್ಯಾಲಯ ಮತ್ತು ನೌಕರನ ಮಧ್ಯದಲ್ಲಿಯ ಕರಾರನಿಂದ ಉದ್ಭವಿಸಬಹುದಾದ ಯಾವುದೇ ವಿವಾದವನ್ನು, ಆ ಲಿಖಿತ ಕರಾರಿನಲ್ಲಿ ಉಪಬಂಧಿಸಿದ ವಿಧಾನದಲ್ಲಿ ಹಾಗೂ ಶಾಸನಗಳ ಅನುಸಾರವಾಗಿ ಪರಿಹರಿಸತಕ್ಕದ್ದು.

**40. ಮೇಲ್ಮನವಿ ಹಕ್ಕು.–** ವಿಶ್ವವಿದ್ಯಾಲಯವು, ತನ್ನ ನೌಕರರ ಅಥವಾ ವಿದ್ಯಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡ ಸಂದರ್ಭದಲ್ಲಿ ಬಾಧಿತ ನೌಕರ ಅಥವಾ ವಿದ್ಯಾರ್ಥಿಯು ಶಾಸನಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಮೇಲ್ಮನವಿ ಹಕ್ಕು ಹೊಂದಿರತಕ್ಕದ್ದು.

**41. ಭವಿಷ್ಯ ನಿಧಿ ಮತ್ತು ನಿವೃತ್ತಿ ವೇತನ.–** ವಿಶ್ವವಿದ್ಯಾಲಯವು, ತನ್ನ ನೌಕರರ ಪ್ರಯೋಜನಕ್ಕಾಗಿ ಶಾಸನಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ತಾನು ಸೂಕ್ತವೆಂದು ಭಾವಿಸಬಹುದಾದಂಥ ಭವಿಷ್ಯ ನಿಧಿ ಅಥವಾ ನಿವೃತ್ತಿ ವೇತನ ನಿಧಿಗಳನ್ನು ರಚಿಸತಕ್ಕದ್ದು ಹಾಗೂ ಅಂಥ ವಿಮಾ ಯೋಜನೆಗಳನ್ನು ಒದಗಿಸತಕ್ಕದ್ದು.

**42. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಇತರ ಸಂಸ್ಥೆಯ ಸದಸ್ಯನಾಗಿ ಯಾವೊಬ್ಬ ವ್ಯಕ್ತಿಯು ಸೂಕ್ತವಾಗಿ ಆಯ್ಕೆಯಾಗಿದ್ದಾನೆಯೇ ಅಥವಾ ನೇಮಕಗೊಂಡಿದ್ದಾನೆಯೇ ಅಥವಾ ಅದಕ್ಕೆ ಅರ್ಹನಾಗಿದ್ದಾನೆಯೇ ಎಂಬ ಯಾವುದೇ ಪ್ರಶ್ನೆ ಉದ್ಭವಿಸಿದರೆ ಆ ವಿಷಯವನ್ನು ತೀರ್ಮಾನಕ್ಕಾಗಿ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**43. ಸಮಿತಿಗಳ ರಚನೆ.–** 22ನೇ ಪ್ರಕರಣದಲ್ಲಿ ನಮೂದಿಸಿದ ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ತಾನು ಸೂಕ್ತವೆಂದು ಭಾವಿಸಬಹುದಾದಂಥ ಆ ಪ್ರಾಧಿಕಾರದ ಸದಸ್ಯರನ್ನು ಒಳಗೊಂಡಂಥ ಪ್ರಾಧಿಕಾರದ ಒಂದು ಸಮಿತಿಯನ್ನು ರಚಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**44. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಂಸ್ಥೆಯ ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ಪೈಕಿ ಯಾವುದೇ ಸ್ಥಾನವು ಆಕಸ್ಮಿಕವಾಗಿ ಖಾಲಿಯಾದರೆ ಯಾರ ಸ್ಥಾನವು ಖಾಲಿಯಾಗಿ ತುಂಬಬೇಕಾಗಿ ಬಂದಿದೆಯೋ ಆ ಸದಸ್ಯನನ್ನು ಯಾವ ರೀತಿಯಲ್ಲಿ ಆರಿಸಲಾಗಿತ್ತೋ ಅದೇ ರೀತಿಯಲ್ಲಿ ಹೊಸ ಸದಸ್ಯನನ್ನು ಆರಿಸಿ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ಖಾಲಿ ಸ್ಥಾನವನ್ನು ಭರ್ತಿ ಮಾಡಿದ ವ್ಯಕ್ತಿಯು ಆತನು ಯಾವ ಸದಸ್ಯನ ಸ್ಥಾನದಲ್ಲಿ ಭರ್ತಿಯಾಗಿರುವನೋ ಆ ಸದಸ್ಯನು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯನಾಗಿ ಉಳಿಯುತ್ತಿದ್ದ ಬಾಕಿ ಅವಧಿಯವರೆಗೆ ಮಾತ್ರ ಸದಸ್ಯನಾಗಿರತಕ್ಕದ್ದು.

**45. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.–** ಈ ಅಧಿನಿಯಮ ಅಥವಾ ಶಾಸನಗಳು ಅಥವಾ ನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ವಿಶ್ವವಿದ್ಯಾಲಯದ ಯಾವುದೇ ಅಧಿಕಾರಿ ಅಥವಾ ಇತರ ನೌಕರರ ವಿರುದ್ಧ ಯಾವುದೇ ದಾವೆ ಅಥವಾ ಇತರ ಕಾನೂನು ವ್ಯವಹರಣೆ ನಡೆಸಲು ಅವಕಾಶ ಇರತಕ್ಕದ್ದಲ್ಲ.

**46. ತಾತ್ಕಾಲಿಕ ಉಪಬಂಧಗಳು.–** ಈ ಅಧಿನಿಯಮ ಮತ್ತು ಶಾಸನಗಳ ಯಾವುದೇ ಇತರ ಉಪಬಂಧಗಳಲ್ಲಿ ಏನೇ ಇದ್ದರೂ,–

(i) ಮೊದಲನೇ ಕುಲಪತಿಯವರನ್ನು ಮತ್ತು ಸಹಕುಲಪತಿಯವರು ಯಾರಾದರು ಇದ್ದರೆ ಅವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(ii) ಮೊದಲನೇ ಕುಲಸಚಿವರನ್ನು ಮತ್ತು ಮೊದಲ ಹಣಕಾಸು ಅಧಿಕಾರಿಯವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(iii) ಮೊದಲನೇ ಆಡಳಿತ ಮಂಡಳಿ, ಮೊದಲನೇ ಹಣಕಾಸು ಸಮಿತಿ, ಮೊದಲನೇ ದೂರಶಿಕ್ಷಣ ಸಮಿತಿ, ಮೊದಲನೇ ಸಂಶೋಧನಾ ಪರಿಷತ್ತು ಹಾಗೂ ಮೊದಲನೇ ಪ್ರಶಿಕ್ಷಣ ಪರಿಷತ್ತನ್ನು ಕುಲಾಧಿಪತಿಯವರು ರಚಿಸತಕ್ಕದ್ದು.

**47. ಶಾಶ್ವತ ಶಾಸನಬದ್ಧ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಇಪ್ಪತ್ತೈದು ಕೋಟಿ ರೂಪಾಯಿಗಳನ್ನುಳ್ಳ ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು ಮತ್ತು ಈ ನಿಧಿಯನ್ನು ಸ್ವಪ್ರೇರಣೆಯಿಂದ ಹೆಚ್ಚಿಸಬಹುದೇ ಹೊರತು ಅದಕ್ಕಿಂತ ಕಡಿಮೆ ಮಾಡತಕ್ಕದ್ದಲ್ಲ.

(2) ವಿಶ್ವವಿದ್ಯಾಲಯವು, ನಿಯಮಿಸಬಹುದಾದಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಹಣವನ್ನು ಹೂಡಲು ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಗೆ ವರ್ಗಾವಣೆ ಮಾಡಬಹುದು. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಸಂದರ್ಭದಲ್ಲಿ ಹೊರತುಪಡಿಸಿ, ಇತರ ಯಾವ ಸಂದರ್ಭದಲ್ಲೂ ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಯಾವ ಮೊಬಲಗನ್ನೂ ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(4) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಬರುವ ಆದಾಯದ ಶೇಕಡಾ ಎಪ್ಪತ್ತೈದರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತೈದರಷ್ಟನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**48. ವಿಶ್ವವಿದ್ಯಾಲಯದ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂಥ ನಿಧಿಗಳನ್ನು ಒಳಗೊಂಡ ವಿಶ್ವವಿದ್ಯಾಲಯದ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಕಾಲಕಾಲಕ್ಕೆ ಸ್ವೀಕರಿಸಬಹುದಾದ ದೇಣಿಗೆಗಳು ಮತ್ತು ಇತರ ನಿಧಿಗಳೂ ಒಳಗೊಂಡಿರಬಹುದು.

(2) ವಿಶ್ವವಿದ್ಯಾಲಯವು, ಶಾಸನಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ವಿಶ್ವವಿದ್ಯಾಲಯದ ದತ್ತಿನಿಧಿಯನ್ನು ಹೂಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯ ದತ್ತಿ ನಿಧಿಯು, ವಿಶ್ವವಿದ್ಯಾಲಯವು ತನ್ನ ಸಾಮಾಜಿಕ ಧ್ಯೇಯೋದ್ದೇಶಗಳನ್ನು ನೆರವೇರಿಸುವ ಸಂದರ್ಭದಲ್ಲಿ ಮತ್ತು/ಅಥವಾ ಮುಂಗಾಣದ ಸನ್ನಿವೇಶಗಳಲ್ಲಿ ಉದ್ಭವಿಸಬಹುದಾದ ಹಣಕಾಸು ಸವಾಲುಗಳಿಂದ ತನ್ನನ್ನು ರಕ್ಷಿಸಿಕೊಳ್ಳುವುದಕ್ಕಾಗಿ, ಸ್ವಇಚ್ಛೆಯಿಂದ ನಿರ್ವಹಿಸಿಕೊಂಡು ಬರಲು ಮತ್ತು ಜವಾಬ್ದಾರಿಯಿಂದ ಹಣ ಹೂಡಿಕೆ ಮಾಡಲು ಇಚ್ಛೆಯುಳ್ಳವರಾಗಿ ಸ್ವಯಂ ವಿಧಿಸಿಕೊಂಡ ನಿಧಿಯಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಗೆ ವರ್ಗಾಯಿಸಬಹುದು. ವಿಶ್ವವಿದ್ಯಾಲಯದ ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭದಲ್ಲೂ ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನು ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(5) ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಬರುವ ಆದಾಯದ ಶೇಕಡಾ ಎಂಭತ್ತರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತರಷ್ಟನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**49. ಸಾಮಾನ್ಯ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಸಾಮಾನ್ಯ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದಕ್ಕೆ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯವು ವಿಧಿಸಬಹುದಾದ ಎಲ್ಲಾ ಶುಲ್ಕಗಳು;

(ii) ಯಾವುದೇ ಇತರ ಮೂಲಗಳಿಂದ ಸ್ವೀಕರಿಸಬಹುದಾದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯವು ಮಾಡುವ ಎಲ್ಲಾ ದೇಣಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು;

(2) ಸಾಮಾನ್ಯ ನಿಧಿಗೆ ಜಮಾ ಮಾಡುವ ನಿಧಿಗಳನ್ನು ವಿಶ್ವವಿದ್ಯಾಲಯದ ಎಲ್ಲಾ ಆವರ್ತಕ ವೆಚ್ಚಗಳನ್ನು ಭರಿಸಲು ಉಪಯೋಗಿಸಕೊಳ್ಳತಕ್ಕದ್ದು.

**50. ಅಭಿವೃದ್ಧಿ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಅಭಿವೃದ್ಧಿ ನಿಧಿಯನ್ನು ಸಹ ಸ್ಥಾಪಿಸತಕ್ಕದ್ದು. ಇದಕ್ಕೆ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಅಭಿವೃದ್ಧಿ ಶುಲ್ಕ;

(ii) ವಿಶ್ವವಿದ್ಯಾಲಯದ ಅಭಿವೃದ್ಧಿಯ ಉದ್ದೇಶಕ್ಕಾಗಿ ಯಾವುದೇ ಇತರ ಮೂಲಗಳಿಂದ ಸ್ವೀಕರಿಸಿದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯವು ನೀಡಿದ ಎಲ್ಲಾ ವಂತಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು, ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು;

(v) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸುವ ಎಲ್ಲಾ ಆದಾಯಗಳು .

(2) ಅಭಿವೃದ್ಧಿ ನಿಧಿಗೆ ಕಾಲಕಾಲಕ್ಕೆ ಜಮಾ ಮಾಡಿದ ನಿಧಿಯನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಉಪಯೋಗಿಸಕೊಳ್ಳತಕ್ಕದ್ದು.

**51. ನಿಧಿಗಳ ನಿರ್ವಹಣೆ.–** 47, 48, 49 ಮತ್ತು 50ನೇ ಪ್ರಕರಣಗಳಡಿಯಲ್ಲಿ ಸ್ಥಾಪಿಸಲಾದ ನಿಧಿಗಳನ್ನು ಪ್ರಬಂಧಕ ಮಂಡಳಿಯ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಗಳಿಗೆ ಒಳಪಟ್ಟು ನಿಯಮಿಸಬಹುದಾದಂಥ ವಿಧಾನದಲ್ಲಿ ನಿಯಂತ್ರಿಸತಕ್ಕದ್ದು ಹಾಗೂ ಇಟ್ಟುಕೊಂಡು ಬರತಕ್ಕದ್ದು.

**52. ವಾರ್ಷಿಕ ವರದಿ.–** (1) ವಿಶ್ವವಿದ್ಯಾಲಯದ ವಾರ್ಷಿಕ ವರದಿಯನ್ನು ಆಡಳಿತ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ಅನುಮೋದನೆ ಕೋರಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಪ್ರಬಂಧಕ ಮಂಡಳಿಯು, ವಾರ್ಷಿಕ ವರದಿಯನ್ನು ತನ್ನ ಸಭೆಯಲ್ಲಿ ಪರಿಗಣಿಸತಕ್ಕದ್ದು ಹಾಗೂ ಅದನ್ನು ಮಾರ್ಪಾಡುಗಳೊಡನೆ ಅಥವಾ ಮಾರ್ಪಾಡುಗಳಿಲ್ಲದೆ ಅನುಮೋದಿಸಬಹುದು.

(3) ಪ್ರಬಂಧಕ ಮಂಡಳಿಯು ಸೂಕ್ತವಾಗಿ ಅನುಮೋದಿಸಿದ ವಾರ್ಷಿಕ ವರದಿಯ ಒಂದು ಪ್ರತಿಯನ್ನು ಸಂದರ್ಶಕರಿಗೆ ಹಾಗೂ ರಾಜ್ಯ ಸರ್ಕಾರಕ್ಕೆ ಪ್ರತಿವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ಡಿಸೆಂಬರ್ 31ಕ್ಕೆ ಮೊದಲು ಸಲ್ಲಿಸತಕ್ಕದ್ದು.

**53. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.–** (1) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕ ಪತ್ರ ಮತ್ತು ಜಮಾ ಖರ್ಚು ಪಟ್ಟಿಯನ್ನು ಆಡಳಿತ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯಕ್ಕೆ ಎಲ್ಲಾ ಮೂಲಗಳಿಂದ ಪ್ರಾಪ್ತವಾಗುವ ಅಥವಾ ಅದು ಸ್ವೀಕರಿಸುವ ಎಲ್ಲಾ ನಿಧಿಗಳು ಹಾಗೂ ವಿತರಿಸಿದ ಅಥವಾ ಸಂದಾಯ ಮಾಡಿದ ಎಲ್ಲಾ ಮೊಬಲಗುಗಳನ್ನು ವಿಶ್ವವಿದ್ಯಾಲಯವು ನಿರ್ವಹಿಸುವ ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕಪತ್ರಗಳನ್ನು, ಭಾರತದ ಚಾರ್ಟೆಡ್ ಅಕೌಂಟೆಂಟ್‌ಗಳ ಸಂಸ್ಥೆಯ ಸದಸ್ಯರಾಗಿರುವ ಒಬ್ಬ ಲೆಕ್ಕಪರಿಶೋಧಕರಿಂದ ಪ್ರತಿ ವರ್ಷವೂ, ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಲೆಕ್ಕಪರಿಶೋಧನಾ ವರದಿಯೊಡನೆ ಪ್ರಬಂಧಕ ಮಂಡಳಿಗೆ ಪ್ರತಿ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ನವೆಂಬರ್ 30ಕ್ಕೆ ಮೊದಲು ಸಲ್ಲಿಸತಕ್ಕದ್ದು.

(4) ವಾರ್ಷಿಕ ವರದಿಗಳು, ಜಮಾಖರ್ಚು ಪಟ್ಟಿ ಮತ್ತು ಲೆಕ್ಕಪರಿಶೋಧಕ ವರದಿಯನ್ನು ಪ್ರಬಂಧಕ ಮಂಡಳಿಯು ತನ್ನ ಸಭೆಯಲ್ಲಿ ಪರ್ಯಾಲೋಚಿಸತಕ್ಕದ್ದು ಮತ್ತು ಪ್ರಬಂಧಕ ಮಂಡಳಿಯು ಅದನ್ನು ತನ್ನ ಅಭಿಪ್ರಾಯಗಳೊಡನೆ ಸಂದರ್ಶಕರಿಗೆ ಹಾಗೂ ಸರ್ಕಾರಕ್ಕೆ ಪ್ರತಿ ವರ್ಷದ ಡಿಸೆಂಬರ್ 31ಕ್ಕೆ ಮುಂಚೆ ಕಳುಹಿಸತಕ್ಕದ್ದು.

(5) ಲೆಕ್ಕಪರಿಶೋಧಕರ ವರದಿಯಲ್ಲಿ ಯಾವುದಾದರೂ ಗಮನಾರ್ಹ ಮಾರ್ಪಾಟು ಕಂಡುಬಂದಲ್ಲಿ ರಾಜ್ಯ ಸರ್ಕಾರವು ವಿಶ್ವವಿದ್ಯಾಲಯಕ್ಕೆ ನಿರ್ದೇಶನಗಳನ್ನು ನೀಡತಕ್ಕದ್ದು ಮತ್ತು ಅಂಥ ನಿರ್ದೇಶನಗಳಿಗೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**54. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ.-** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಅಥವಾ ಸಮಿತಿಯ ಯಾವುದೇ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ ಅಥವಾ ನಿರ್ಣಯಗಳು ಅಥವಾ ವಿಶ್ವವಿದ್ಯಾಲಯದ ಸ್ವಾಧೀನದಲ್ಲಿರುವ ಇತರ ದಾಖಲೆಗಳು ಅಥವಾ ವಿಶ್ವವಿದ್ಯಾಲಯವು ಸೂಕ್ತವಾಗಿ ನಿರ್ವಹಿಸುವ ಯಾವುದೇ ರಿಜಿಸ್ಟರ್‌ನಲ್ಲಿಯ ಯಾವುದೇ ನಮೂದುಗಳ ಪ್ರತಿಗಳನ್ನು, ಅವುಗಳ ಮೇಲೆ ಕುಲಸಚಿವರು ಪ್ರಮಾಣೀಕರಿಸಿದ್ದರೆ, ಅವುಗಳನ್ನು ಅಂಥ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ, ನಿರ್ಣಯ ಅಥವಾ ದಾಖಲೆ ಅಥವಾ ರಿಜಿಸ್ಟರ್‌ನಲ್ಲಿ ಇರುವ ನಮೂದುಗಳು, ಮೇಲ್ನೋಟದ ಸಾಕ್ಷ್ಯವೆಂಬುದಾಗಿ ಸ್ವೀಕರಿಸತಕ್ಕದ್ದು ಮತ್ತು ವಿಷಯಗಳ ಸಾಕ್ಷ್ಯವಾಗಿ ಅವುಗಳನ್ನು ಅಂಗೀಕರಿಸತಕ್ಕದ್ದು ಹಾಗೂ ಅವುಗಳ ಮೂಲ ದಾಖಲೆಗಳನ್ನೇ ಸಲ್ಲಿಸಿದ್ದರೆ ಹೇಗೆ ಅದನ್ನು ಅವುಗಳಲ್ಲಿ ದಾಖಲಿಸಿರುವ ವಿಷಯಗಳು ಮತ್ತು ವಹಿವಾಟುಗಳ ಸಾಕ್ಷ್ಯವಾಗಿ ಅಂಗೀಕರಿಸಲಾಗುತ್ತಿತ್ತೋ ಅದೇ ರೀತಿ ಇವನ್ನೂ ಸಾಕ್ಷ್ಯವಾಗಿ ಅಂಗೀಕರಿಸತಕ್ಕದ್ದು.

**55. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಅಧಿಕಾರ.-** (1) ವಿಶ್ವವಿದ್ಯಾಲಯ, ಅದರ್ನ ರಚನೆ ಅಥವಾ ನಿಗಮನವನ್ನು ನಿಯಂತ್ರಿಸುವ ಕಾನೂನಿಗೆ ಅನುಸಾರವಾಗಿ, ಅದನ್ನು ಸಮಾಪನಗೊಳಿಸಲು ಉದ್ದೇಶಿಸಿದ್ದಲ್ಲಿ ಅದು ಕನಿಷ್ಠ ಆರು ತಿಂಗಳ ಲಿಖಿತ ನೋಟಿಸನ್ನು ಸರ್ಕಾರಕ್ಕೆ ನೀಡತಕ್ಕದ್ದು.

(2) ದುರ್ವ್ಯವಹಾರ, ದುರಾಡಳಿತ ಮತ್ತು ಅಶಿಸ್ತು ಆಗಿದೆ ಎಂಬುದನ್ನು ಗುರುತಿಸಿದರೆ, ಸರ್ಕಾರವು, ವಿಶ್ವವಿದ್ಯಾಲಯದ ಆಡಳಿತ ವರ್ಗದವರಿಗೆ ಆಡಳಿತ ಸರಿಪಡಿಸಬೇಕೆಂದು ನಿರ್ದೇಶನಗಳನ್ನು ನೀಡತಕ್ಕದ್ದು. ನಿಯಮಿಸಬಹುದಾದಂಥ ಅವಧಿಯೊಳಗೆ ಆ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುವ ಅಧಿಕಾರವು ಸರ್ಕಾರದಲ್ಲಿ ನಿಹಿತವಾಗತಕ್ಕದ್ದು.

(3) ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ವಿಧಾನವು, ಸರ್ಕಾರವು ಈ ಸಂಬಂಧದಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು:

ಪರಂತು ವಿಶ್ವವಿದ್ಯಾಲಯವು, ತನ್ನ ಕಾರಣಗಳನ್ನು ಹೇಳಿಕೊಳ್ಳಲು ಸಮಂಜಸ ಅವಕಾಶಗಳನ್ನು ನೀಡಿದ ಹೊರತು ಅಂಥ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

(4) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೋಟಿಸನ್ನು ಸ್ವೀಕರಿಸಿದ ಮೇಲೆ, ಸರ್ಕಾರವು ಸಂಬಂಧಿಸಿದ ನಿಯಂತ್ರಣಾ ಪ್ರಾಧಿಕಾರದೊಡನೆ ಸಮಾಲೋಚಿಸಿ, ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ಉದ್ದೇಶಿಸಿದ ದಿನಾಂಕದಿಂದ, ವಿಶ್ವವಿದ್ಯಾಲಯದಲ್ಲಿ ನಿಯತ ವ್ಯಾಸಂಗ ಕ್ರಮಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕೊನೆಯ ತಂಡ (ಬ್ಯಾಚ್) ತನ್ನ ವ್ಯಾಸಂಗ ಕ್ರಮ ಮುಗಿಸುವವರೆಗೆ ಶಾಸನಗಳಲ್ಲಿ ನಿರ್ದಿಷ್ಟಪಡಿಸಬಹುದಾದಂಥ ವಿಧಾನದಲ್ಲಿ ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು.

**56. ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು.-** (1) 55ನೇ ಪ್ರಕರಣದ (3)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತವನ್ನು ಕೈಗೆತ್ತಿಕೊಳ್ಳುವ ಅವಧಿಯಲ್ಲಿ ಅದರ ಆಡಳಿತಾತ್ಮಕ ವೆಚ್ಚಗಳನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಭರಿಸತಕ್ಕದ್ದು.

(2) ವಿಶ್ವವಿದ್ಯಾಲಯದ ಆಡಳಿತವನ್ನು ಕೈಗೆತ್ತಿಕೊಳ್ಳುವ ಅವಧಿಯಲ್ಲಿ ವಿಶ್ವವಿದ್ಯಾಲಯದ ವೆಚ್ಚವನ್ನು ಭರಿಸಲು 47, 48, 49 ಮತ್ತು 50ನೇ ಪ್ರಕರಣಗಳ ಅಡಿಯಲ್ಲಿ ಉಲ್ಲೇಖಿಸಲಾದ ನಿಧಿಯು ಸಾಕಷ್ಟು ಇಲ್ಲದಿದ್ದಲ್ಲಿ, ಅಂಥ ವೆಚ್ಚವನ್ನು ಸರ್ಕಾರವು, ವಿಶ್ವವಿದ್ಯಾಲಯದ ಸ್ವತ್ತುಗಳು ಮತ್ತು ಆಸ್ತಿಗಳನ್ನು ವಿಲೇ ಮಾಡುವ ಮೂಲಕ ಭರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಸಮಾಪನೆಯು ದುರ್ವ್ಯವಹಾರ ಅಥವಾ ದುರಾಡಳಿತದ ಕಾರಣಗಳಿಗಾಗಿ ಆಗಿದ್ದರೆ, ಸರ್ಕಾರವು ಅಂಥ ದುರ್ವ್ಯವಹಾರಕ್ಕೆ ಅಥವಾ ದುರಾಡಳಿತಕ್ಕೆ ಹೊಣೆಯಾಗಿರುವ ವ್ಯಕ್ತಿಗಳನ್ನು ಗುರುತಿಸುವ ಮತ್ತು ಅವರ ಮೇಲೆ ತಾನು ಸೂಕ್ತವೆಂದು ಭಾವಿಸಬಹುದಾದಂಥ ದಂಡನೆಯನ್ನು ವಿಧಿಸಲು ಸ್ವತಂತ್ರವಾಗಿರತಕ್ಕದ್ದು.

**57. ತೊಂದರೆಗಳ ನಿವಾರಣೆಗೆ ಅಧಿಕಾರ.–** (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಅಥವಾ ಆದೇಶದ ಮೂಲಕ ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಮೂರು ವರ್ಷಗಳು ಮುಕ್ತಾಯವಾದ ತರುವಾಯ ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಅಧಿಸೂಚನೆ ಅಥವಾ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) (1) ನೇ ಉಪ ಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು ಅದನ್ನು ರಚಿಸಿದ ತರುವಾಯ ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

**58. ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ.–** (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ಹೊರಡಿಸಲಾದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ ಆದಷ್ಟು ಬೇಗನೆ ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ ಅದು ಅಧಿವೇಶನದಲ್ಲಿರುವಾಗ ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮುಂಚೆ ರಾಜ್ಯ ವಿಧಾನಮಂಡಲದ ಎರಡೂ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ, ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಒಪ್ಪಿದರೆ ತದನಂತರ ಅಂಥ ನಿಯಮವು ಸಂದರ್ಭಾನುಸಾರ ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ಧತಿಯು ಈ ನಿಯಮದ ಅಡಿಯಲ್ಲಿ ಈ ಮುಂಚೆ ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧೆ ಉಂಟುಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಜಿ.ಕೆ.ಬೋರೇಗೌಡ**
ಸರ್ಕಾರದ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ

**ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ-3) (350 ಪ್ರತಿಗಳು)**

ಉನ್ನತ ಶಿಕ್ಷಣ ಸಚಿವಾಲಯ

ಅಧಿಸೂಚನೆ

ಕ್ರಮಾಂಕ:ಇಡಿ 253 ಯುಎನ್‌ಇ 2010, ಬೆಂಗಳೂರು, ದಿನಾಂಕ:2ನೇ ಆಗಸ್ಟ್, 2010.

ಅಲೈಯನ್ಸ್ ವಿಶ್ವವಿದ್ಯಾಲಯ ಅಧಿನಿಯಮ, 2010ರ (2010ರ ಕರ್ನಾಟಕ ಅಧಿನಿಯಮ ಸಂಖ್ಯೆ: 34) 1ನೇ ಪ್ರಕರಣದ (3)ನೇ ಉಪ-ಪ್ರಕರಣದಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕರ್ನಾಟಕ ಸರ್ಕಾರವು ಈ ಮೂಲಕ ಸದರಿ ಅಧಿನಿಯಮವು ದಿನಾಂಕ: 2.8.2010 ರಿಂದ ಜಾರಿಗೆ ಬರತಕ್ಕದ್ದೆಂದು ಗೊತ್ತುಪಡಿಸುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಯು.ಬಿ.ಉಳವಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾನಿಲಯಗಳು).

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ


| | | |
|---|---|---|
| ಭಾಗ-IVA | ಬೆಂಗಳೂರು, ಶನಿವಾರ, ಏಪ್ರಿಲ್ ೨೧, ೨೦೧೮ (ವೈಶಾಖ ೦೧, ಶಕ ವರ್ಷ ೧೯೪೦) | ನಂ. ೬೦೨ |
| Part-IVA | Bengaluru, Saturday, April 21, 2018 (Vyashaka 01, Shāka Varsha 1940) | No. 602 |


ಸಂಸದೀಯ ವ್ಯವಹಾರಗಳ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಂವ್ಯಶಾಇ 58 ಶಾಸನ 2016, ಬೆಂಗಳೂರು, ದಿನಾಂಕ: 21-04-2018

ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ವಿಶ್ವವಿದ್ಯಾಲಯ ವಿಧೇಯಕ, 2018ಕ್ಕೆ 2018ರ ಏಪ್ರಿಲ್ ತಿಂಗಳ 19ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2018ರ ಕರ್ನಾಟಕ ಅಧಿನಿಯಮ ಸಂಖ್ಯೆ: 19 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2018ರ ಕರ್ನಾಟಕ ಅಧಿನಿಯಮ ಸಂಖ್ಯೆ: 19**

(2018ರ ಏಪ್ರಿಲ್ ತಿಂಗಳ 21ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ವಿಶ್ವವಿದ್ಯಾಲಯ ಅಧಿನಿಯಮ, 2018**

(2018ರ ಏಪ್ರಿಲ್ ತಿಂಗಳ 19ನೇ ದಿನಾಂಕದಂದು ರಾಜ್ಯಪಾಲರಿಂದ ಒಪ್ಪಿಗೆಯನ್ನು ಪಡೆಯಲಾಗಿದೆ)

ಮಾನವಿಕಗಳು, ಭಾಷೆಗಳು, ಜೀವ, ಶಾರೀರಿಕ ಮತ್ತು ಸಂಬಂಧಿತ ವಿಜ್ಞಾನ, ಗಣಕ ವಿಜ್ಞಾನ, ಮಾಹಿತಿ ತಂತ್ರಜ್ಞಾನ, ಇಂಜಿನಿಯರಿಂಗ್, ತಾಂತ್ರಿಕ ಕೋರ್ಸುಗಳು, ವೈದ್ಯಕೀಯ ವಿಜ್ಞಾನಗಳು ಮತ್ತು ಸಂಬಂಧಿತ ವಿಭಾಗಗಳು, ವಾಣಿಜ್ಯ ಮತ್ತು ವ್ಯವಹಾರ ವ್ಯವಸ್ಥಾಪನೆಗಳಲ್ಲಿ ಪದವಿ, ಸ್ನಾತಕೋತ್ತರ, ಡಾಕ್ಟೊರಲ್ ಮತ್ತು ಪೋಸ್ಟ್ ಡಾಕ್ಟೊರಲ್ ಕೋರ್ಸುಗಳಿಗೆ ಮುಂದುವರಿಯುವ ಮತ್ತು ಅವುಗಳನ್ನು ಒಳಗೊಳ್ಳುವ ವಿಶ್ವವಿದ್ಯಾಲಯ ಶಿಕ್ಷಣದಲ್ಲಿ ಪ್ರಗತಿಯನ್ನು ಮತ್ತು ಅನ್ವೇಷಣೆಯನ್ನು ಬೆಂಬಲಿಸುವುದು, ಪ್ರೋತ್ಸಾಹಿಸುವುದು ಮತ್ತು ಕೈಗೊಳ್ಳುವುದು ಹಾಗೂ ಈ ಕ್ಷೇತ್ರಗಳಲ್ಲಿ ಸಲಹೆಯನ್ನೂ ಒಳಗೊಂಡಂತೆ ಸಂಶೋಧನೆ, ಪ್ರಗತಿ ಮತ್ತು ಜ್ಞಾನ ಪ್ರಸಾರಕ್ಕೆ ಉಪಬಂಧಗಳನ್ನು ಕಲ್ಪಿಸಲು ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಿಗಾಗಿ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶೈಕ್ಷಣಿಕ ಸೊಸೈಟಿ (ನೋಂ), ಉಜಿರೆ, ದಕ್ಷಿಣ ಕನ್ನಡ ಇವರ ಮೂಲಕ ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದಕ್ಕಾಗಿ ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಮಾನವಿಕಗಳು, ಭಾಷೆಗಳು, ಜೀವ, ಶಾರೀರಿಕ ಮತ್ತು ಸಂಬಂಧಿತ ವಿಜ್ಞಾನ, ಗಣಕ ವಿಜ್ಞಾನ, ಮಾಹಿತಿ ತಂತ್ರಜ್ಞಾನ, ಇಂಜಿನಿಯರಿಂಗ್, ತಾಂತ್ರಿಕ ಕೋರ್ಸುಗಳು, ವೈದ್ಯಕೀಯ ವಿಜ್ಞಾನಗಳು ಮತ್ತು ಸಂಬಂಧಿತ ವಿಭಾಗಗಳು, ವಾಣಿಜ್ಯ ಮತ್ತು ವ್ಯವಹಾರ ವ್ಯವಸ್ಥಾಪನೆಗಳಲ್ಲಿ ಪದವಿ, ಸ್ನಾತಕೋತ್ತರ, ಡಾಕ್ಟೊರಲ್ ಮತ್ತು ಪೋಸ್ಟ್ ಡಾಕ್ಟೊರಲ್ ಕೋರ್ಸುಗಳಿಗೆ ಮುಂದುವರಿಯುವ ಮತ್ತು ಅವುಗಳನ್ನು ಒಳಗೊಳ್ಳುವ ವಿಶ್ವವಿದ್ಯಾಲಯ ಶಿಕ್ಷಣದಲ್ಲಿ ಪ್ರಗತಿಯನ್ನು ಮತ್ತು ಅನ್ವೇಷಣೆಯನ್ನು ಬೆಂಬಲಿಸುವುದು, ಪ್ರೋತ್ಸಾಹಿಸುವುದು ಮತ್ತು ಕೈಗೊಳ್ಳುವುದು ಹಾಗೂ ಈ ಕ್ಷೇತ್ರಗಳಲ್ಲಿ ಸಲಹೆಯನ್ನೂ ಒಳಗೊಂಡಂತೆ ಸಂಶೋಧನೆ, ಪ್ರಗತಿ ಮತ್ತು ಜ್ಞಾನ ಪ್ರಸಾರಕ್ಕೆ ಉಪಬಂಧಗಳನ್ನು ಕಲ್ಪಿಸಲು ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಿಗಾಗಿ

ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶೈಕ್ಷಣಿಕ ಸೊಸೈಟಿ (ನೋಂ), ಉಜಿರೆ, ದಕ್ಷಿಣ ಕನ್ನಡ ಇವರ ಮೂಲಕ ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೊಂಬತ್ತನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

## ಅಧ್ಯಾಯ – I
## ಪ್ರಾರಂಭಿಕ

**1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.–** (1) ಈ ಅಧಿನಿಯಮವನ್ನು ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ವಿಶ್ವವಿದ್ಯಾಲಯ ಅಧಿನಿಯಮ, 2018 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. ಪರಿಭಾಷೆಗಳು.–** ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) "ಶೈಕ್ಷಣಿಕ ಪರಿಷತ್ತು (ಅಕೆಡೆಮಿಕ್ ಕೌನ್ಸಿಲ್)" ಎಂದರೆ, 25ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿಸಲಾದ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು;

(ಬಿ) "ಕಾರ್ಯಸೂಚಿ ವಿಷಯಗಳು", ಎಂದರೆ, ಪರಿನಿಯಮಗಳಲ್ಲಿ ಹೆಸರಿಸಬಹುದಾದ ಮತ್ತು ಒಂದು ಸಭೆಯಲ್ಲಿ ಆ ವಿಷಯಗಳನ್ನು ಮತ್ತು ಕಲಾಪಗಳನ್ನು ಅನುಮೋದಿಸಬಹುದೆಂದು ತಮ್ಮ ಸಮ್ಮತಿ ಸೂಚಿಸಿ ಕುಲಾಧಿಪತಿಯವರು ಮುಂಚಿತವಾಗಿಯೇ ಲಿಖಿತ ಅನುಮೋದನೆಯನ್ನು ಕೊಟ್ಟಿದ್ದಾಗ ಮಾತ್ರವೇ ಸಂದರ್ಭಾನುಸಾರ ಪ್ರಬಂಧಕರ ಮಂಡಳಿ ಅಥವಾ ವ್ಯವಸ್ಥಾಪನಾ ಮಂಡಳಿ ಅಥವಾ ಶೈಕ್ಷಣಿಕ ಪರಿಷತ್ತು ಅಥವಾ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳು ಅಥವಾ ಯಾವುದೇ ಸಮಿತಿಯವರು ಕಾರ್ಯಸೂಚಿಯಲ್ಲಿ ಸೇರಿಸಬಹುದಾದ ಅಥವಾ ಸಭೆಯಲ್ಲಿ ಚರ್ಚೆಗೆ ತೆಗೆದುಕೊಂಡು ನಿರ್ಣಯವನ್ನು ಕೊಡಬಹುದಾದ ಎಲ್ಲಾ ವಿಷಯಗಳು ಮತ್ತು ಕಲಾಪಗಳು;

(ಸಿ) "ಪ್ರಬಂಧಕರ ಮಂಡಳಿ" ಎಂದರೆ, 23ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಪ್ರಬಂಧಕರ ಮಂಡಳಿ;

(ಡಿ) "ವ್ಯವಸ್ಥಾಪನಾ ಮಂಡಳಿ" ಎಂದರೆ 24ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದಂತೆ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿ;

(ಇ) "ಕುಲಾಧಿಪತಿ", "ಕುಲಪತಿ", "ಸಹಕುಲಪತಿ" ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ ಮತ್ತು ಸಹಕುಲಪತಿ;

(ಎಫ್) "ಕ್ಯಾಂಪಸ್" ಎಂದರೆ, ಅದು ರಾಜ್ಯದೊಳಗೆ ಇರುವ ವಿಶ್ವವಿದ್ಯಾಲಯವು ಸ್ಥಾಪಿಸಿದ, ನಿರ್ವಹಿಸುವ ಒಂದು ಕ್ಯಾಂಪಸ್;

(ಜಿ) "ಸಮಿತಿಗಳು" ಎಂದರೆ, ಈ ಅಧಿನಿಯಮದಡಿಯಲ್ಲಿ ರೂಪಿಸಲಾದ ಸಮಿತಿಗಳು ಅಥವಾ ಸಂದರ್ಭಾನುಸಾರವಾಗಿ ವಿಶ್ವವಿದ್ಯಾಲಯದ ವಿವಿಧ ಕಾರ್ಯಕರ್ತರು ರಚಿಸಿರುವ ಸಮಿತಿಗಳು ಮತ್ತು ಅದರಲ್ಲಿ ಶೋಧನಾ ಸಮಿತಿ, ನಾಮನಿರ್ದೇಶನ ಸಮಿತಿ, ಹಣಕಾಸು ಸಮಿತಿ, ಹಣಕಾಸು ಪರಿಷತ್ತು ಮತ್ತು ಅಂಥ ಇತರ ಸಮಿತಿಗಳು ಒಳಗೊಳ್ಳುತ್ತವೆ;

(ಎಚ್) "ಘಟಕ ಕಾಲೇಜು" ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುತ್ತಿರುವ ಒಂದು ಕಾಲೇಜು ಅಥವಾ ಸಂಸ್ಥೆ;

(ಐ) "ಹಣಕಾಸು ಸಮಿತಿ" ಎಂದರೆ, 27ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಹಣಕಾಸು ಸಮಿತಿ;

(ಜೆ) "ಸರ್ಕಾರ" ಎಂದರೆ, ಕರ್ನಾಟಕ ಸರ್ಕಾರ;

(ಕೆ) "ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳು" ಎಂದರೆ, ವಿಶ್ವವಿದ್ಯಾಲಯ ಅನುದಾನ ಆಯೋಗ, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು, ರಾಷ್ಟ್ರೀಯ ಬೋಧಕ ಶಿಕ್ಷಣ ಪರಿಷತ್ತು, ಭಾರತೀಯ ವೈದ್ಯಕೀಯ ಪರಿಷತ್ತು, ಭಾರತೀಯ ಔಷಧ ವಿಜ್ಞಾನ ಪರಿಷತ್ತು, ರಾಷ್ಟ್ರೀಯ ಮೌಲ್ಯಮಾಪನ ಮತ್ತು ಅಧಿಮಾನ್ಯತಾ ಪರಿಷತ್ತು, ಭಾರತೀಯ ಕೃಷಿ ಸಂಶೋಧನಾ ಪರಿಷತ್ತು, ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಪರಿಷತ್ತು ಮತ್ತು ಸರ್ಕಾರವನ್ನು ಒಳಗೊಂಡು ಉನ್ನತ ಶಿಕ್ಷಣದಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುವಂತೆ ನೋಡಿಕೊಳ್ಳುವುದಕ್ಕಾಗಿ ಗುಣಮಟ್ಟಗಳು ಮತ್ತು ಷರತ್ತುಗಳನ್ನು ವಿಧಿಸುವುದಕ್ಕಾಗಿ, ಕೇಂದ್ರ ಸರ್ಕಾರವು ಸ್ಥಾಪಿಸಿರುವ ಒಂದು ಸಂಸ್ಥೆ;

(ಎಲ್) "ನಿಯಮಿಸಲಾದುದು" ಎಂದರೆ, ಈ ಅಧಿನಿಯಮದಡಿಯಲ್ಲಿ ಸರ್ಕಾರವು ರಚಿಸಲಾದ ನಿಯಮಗಳ ಮೂಲಕ ನಿಯಮಿಸಲಾದುದು;

(ಎಂ) "ಒಂದು ಘಟಕ ಕಾಲೇಜಿಗೆ ಸಂಬಂಧಪಟ್ಟಂತೆ ಪ್ರಾಂಶುಪಾಲರು" ಎಂದರೆ, ಘಟಕ ಕಾಲೇಜಿನ ಮುಖ್ಯಸ್ಥರು ಮತ್ತು ಪ್ರಾಂಶುಪಾಲರು ಇಲ್ಲದಿದ್ದಲ್ಲಿ ಅಥವಾ ನೇಮಕವಾದ ಪ್ರಾಂಶುಪಾಲರ ಗೈರುಹಾಜರಿಯಲ್ಲಿ, ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ತಾತ್ಕಾಲಿಕವಾಗಿ ನೇಮಕಗೊಂಡಿರುವ ಉಪಪ್ರಾಂಶುಪಾಲರು ಅಥವಾ ಯಾವುದೇ ಇತರ ವ್ಯಕ್ತಿಯೂ ಇದರಲ್ಲಿ ಒಳಗೊಳ್ಳುತ್ತಾರೆ;

(ಎನ್) "ಕುಲಸಚಿವರು" ಎಂದರೆ, ವಿಶ್ವವಿದ್ಯಾಲಯದ ಕುಲಸಚಿವರು;

(ಒ) "ಪ್ರಾದೇಶಿಕ ಕೇಂದ್ರ" ಎಂದರೆ, ರಾಜ್ಯದೊಳಗೆ ಅಧ್ಯಯನ ಕೇಂದ್ರಗಳ ಕಾರ್ಯವನ್ನು ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ಮಾಡುವ ಉದ್ದೇಶಕ್ಕಾಗಿ ಮತ್ತು ಅಂಥ ಕೇಂದ್ರಕ್ಕೆ ಕಾರ್ಯಕಾರಿ ಪರಿಷತ್ತು ವಹಿಸಿಕೊಡಬಹುದಾದ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸುವುದಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಅಥವಾ ನಿರ್ವಹಿಸಿಕೊಂಡುಬರುವ ಒಂದು ಕೇಂದ್ರ;

(ಪಿ) ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ "ಪ್ರಾಯೋಜಕ ಪ್ರಾಧಿಕಾರ" ಅಥವಾ "ಪ್ರಾಯೋಜಕ ಸಂಸ್ಥೆ" ಎಂದರೆ ಪ್ರಾಯೋಜಕ ಸೊಸೈಟಿ;

(ಕ್ಯೂ) "ಸೊಸೈಟಿ" ಎಂದರೆ, ಕರ್ನಾಟಕ ಸೊಸೈಟಿಗಳ ನೋಂದಣಿ ಅಧಿನಿಯಮ, 1960ರ (1960ರ ಕರ್ನಾಟಕ ಅಧಿನಿಯಮ 17) ಅಡಿಯಲ್ಲಿನ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶೈಕ್ಷಣಿಕ ಸೊಸೈಟಿ (ನೋಂ), ಉಜಿರೆ, ದಕ್ಷಿಣ ಕನ್ನಡ;

(ಆರ್) "ರಾಜ್ಯ" ಎಂದರೆ, ಕರ್ನಾಟಕ ರಾಜ್ಯ;

(ಎಸ್) "ಪರಿನಿಯಮಗಳು" ಮತ್ತು "ವಿನಿಯಮಗಳು" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಅನುಕ್ರಮವಾಗಿ ವಿಶ್ವವಿದ್ಯಾಲಯದ ಪರಿನಿಯಮಗಳು ಮತ್ತು ವಿನಿಯಮಗಳು;

(ಟಿ) "ಅಧ್ಯಯನ ಕೇಂದ್ರ" ಎಂದರೆ, ವಿದ್ಯಾರ್ಥಿಗಳಿಗೆ ಅಗತ್ಯವಾದ ಬುದ್ಧಿವಾದ, ಸಲಹೆಗಳನ್ನು ನೀಡುವ ಅಥವಾ ಇತರ ಯಾವುದೇ ನೆರವನ್ನು ನೀಡುವ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವು ರಾಜ್ಯದೊಳಗೆ ಸ್ಥಾಪಿಸಿದ ಮತ್ತು ನಿರ್ವಹಿಸಿಕೊಂಡುಬಂದ ಒಂದು ಕೇಂದ್ರ;

(ಯು) "ಅಧ್ಯಾಪಕರು" ಎಂದರೆ, ಒಬ್ಬ ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಒಂದು ಘಟಕ ಕಾಲೇಜಿನಲ್ಲಿ ಬೋಧಿಸುವುದಕ್ಕೆ ಅಥವಾ ಸಂಶೋಧನೆ ನಡೆಸುವುದಕ್ಕೆ ಅಥವಾ ಸಂಶೋಧನೆಗೆ ಮಾರ್ಗದರ್ಶನ ನೀಡುವುದಕ್ಕೆ ನೇಮಕವಾದ ಅಂಥ ಇತರ ವ್ಯಕ್ತಿ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗವು ನಿರ್ದಿಷ್ಟಪಡಿಸಿದ ಗುಣಮಟ್ಟಗಳಿಗೆ ಅನುಸಾರವಾಗಿ ಇರುವ ಘಟಕ ಕಾಲೇಜಿನ ಪ್ರಾಂಶುಪಾಲರು ಇದರಲ್ಲಿ ಒಳಗೊಳ್ಳುತ್ತಾರೆ;

(ವಿ) "ವಿಶ್ವವಿದ್ಯಾಲಯ" ಎಂದರೆ, ಈ ಅಧಿನಿಯಮದಡಿಯಲ್ಲಿ ಸ್ಥಾಪಿಸಿ ನಿಗಮಿತಗೊಳಿಸಲಾದ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ವಿಶ್ವವಿದ್ಯಾಲಯ;

(ಡಬ್ಲ್ಯೂ) "ವಿಶ್ವವಿದ್ಯಾಲಯ ಅನುದಾನಗಳ ಆಯೋಗ" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) 4ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ಆಯೋಗ;

(ಎಕ್ಸ್) "ಸಂದರ್ಶಕರು" ಎಂದರೆ, 13ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ವಿಶ್ವವಿದ್ಯಾಲಯದ ಸಂದರ್ಶಕರು.

## ಅಧ್ಯಾಯ- II

## ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

**3. ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ.–** (1) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಹಕ್ಕನ್ನು ಪ್ರಾಯೋಜಕ ಸೊಸೈಟಿಯು ಹೊಂದಿರತಕ್ಕದ್ದು.

(2) ಸೊಸೈಟಿಯು ರಾಜ್ಯ ಸರ್ಕಾರಕ್ಕೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವವನ್ನು ಸಲ್ಲಿಸತಕ್ಕದ್ದು.

(3) ಪ್ರಸ್ತಾವವು ಈ ಮುಂದಿನ ವಿವರಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಸೊಸೈಟಿಯ ವಿವರಗಳೊಂದಿಗೆ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು;

(ii) ವಿಶ್ವವಿದ್ಯಾಲಯದ ವ್ಯಾಪ್ತಿ ಮತ್ತು ಸ್ಥಾನಮಾನ ಹಾಗೂ ಭೂಮಿಯ ಲಭ್ಯತೆ;

(iii) ಪ್ರಾರಂಭದ ದಿನಾಂಕದಿಂದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳಬೇಕೆಂದಿರುವ ಅಧ್ಯಯನ ಮತ್ತು ಸಂಶೋಧನಾ ಕಾರ್ಯಕ್ರಮಗಳ ಸ್ವರೂಪ ಮತ್ತು ಬಗೆಗಳು;

(iv) ಪ್ರಾರಂಭಿಸಬೇಕೆಂದು ಪ್ರಸ್ತಾಪಿಸಿರುವ ವ್ಯಾಸಂಗ ವಿಭಾಗಗಳು (ಫ್ಯಾಕಲ್ಟಿಗಳು), ಅಧ್ಯಯನ ಕ್ರಮಗಳು ಮತ್ತು ಸಂಶೋಧನೆಗಳ ಸ್ವರೂಪ;

(v) ಕಟ್ಟಡಗಳು, ಸಲಕರಣೆಗಳು ಮತ್ತು ರಚನಾ ಸೌಕರ್ಯಗಳನ್ನು ಒದಗಿಸುವಂಥ ಕ್ಯಾಂಪಸ್ ಅಭಿವೃದ್ಧಿ;

(vi) ಪ್ರಾರಂಭದ ದಿನಾಂಕದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಗಾಗಿ ಬಂಡವಾಳ ವೆಚ್ಚದ ಹಂತಗಳು;

(vii) ಬಾಬುವಾರು ಆವರ್ತಕ ವೆಚ್ಚ, ಆರ್ಥಿಕ ಮೂಲಗಳು ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ತಗಲುವ ಅಂದಾಜು ವೆಚ್ಚ;

(viii) ಸಂಪನ್ಮೂಲ ಸಂಗ್ರಹಣೆಗಾಗಿ ಯೋಜನೆ ಮತ್ತು ಅದಕ್ಕೆ ಬಂಡವಾಳದಿಂದ ತಗಲುವ ವೆಚ್ಚ ಹಾಗೂ ಪ್ರತಿಯೊಂದು ಮೂಲಕ್ಕೂ ಮರು ಸಂದಾಯ ಮಾಡುವ ರೀತಿ;

(ix) ವಿದ್ಯಾರ್ಥಿಗಳಿಂದ ಶುಲ್ಕ ವಸೂಲು ಮಾಡಿ ಆಂತರಿಕವಾಗಿ ನಿಧಿ ಸಂಗ್ರಹಿಸುವ ಯೋಜನೆ, ಸಲಹಾ ಸೇವೆ ಮತ್ತು ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಿಗೆ ಸಂಬಂಧಿಸಿದ ಇತರ ಚಟುವಟಿಕೆಗಳಿಂದ ನಿರೀಕ್ಷಿತ ವರಮಾನಗಳು ಮತ್ತು ಇತರ ನಿರೀಕ್ಷಿತ ವರಮಾನಗಳು;

(x) ಘಟಕವೊಂದಕ್ಕೆ ತಗಲುವ ವೆಚ್ಚದ ವಿವರಗಳು, ಆರ್ಥಿಕವಾಗಿ ದುರ್ಬಲವಾದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕ, ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿ ವೇತನದಲ್ಲಿ ನೀಡುವ ರಿಯಾಯಿತಿ ಅಥವಾ ವಿನಾಯತಿಯ ಪರಿಮಿತಿಯ ವಿವರಗಳನ್ನು ಮತ್ತು ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳಿಗೆ ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳು ಪ್ರಾಯೋಜಿಸಿದ ವಿದ್ಯಾರ್ಥಿಗಳಿಗೆ ಮತ್ತು ಭಾರತವನ್ನುಳಿದು ಇತರ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ವಿಧಿಸತಕ್ಕ ಶುಲ್ಕದ ದರಗಳು ಬೇರೆ ಬೇರೆ ಇದ್ದಲ್ಲಿ ಅವುಗಳನ್ನು ಸೂಚಿಸುವ ಶುಲ್ಕ ರಚನೆಯ ವಿವರಗಳು;

(xi) ಸಂಬಂಧಪಟ್ಟ ವಿದ್ಯಾ ವಿಭಾಗದಲ್ಲಿ ಪ್ರಾಯೋಜಕ ಸೊಸೈಟಿಯು ದೊರಕಿಸಿಕೊಡಲಿರುವ ವರ್ಷಗಳ ಅನುಭವ ಮತ್ತು ಪರಿಣಿತಿ ಹಾಗೂ ಅದರ ಹಣಕಾಸಿನ ಸಂಪನ್ಮೂಲಗಳು;

(xii) ವಿಶ್ವವಿದ್ಯಾಲಯದಲ್ಲಿರುವ ಅಧ್ಯಯನ ಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕಾಗಿ ಇರುವ ವ್ಯವಸ್ಥೆ;

(xiii) ವಿಶ್ವವಿದ್ಯಾಲಯವು ಸ್ಥಾಪನೆಯಾಗುವುದಕ್ಕೆ ಮೊದಲು ನೆರವೇರಿಸಬೇಕೆಂದು ರಾಜ್ಯ ಸರ್ಕಾರವು ಅಗತ್ಯಪಡಿಸಬಹುದಾದ ಅಂಥ ಇತರ ಷರತ್ತುಗಳ ನೆರವೇರಿಕೆಯ ಹಂತ.

(4) ಪ್ರಾಯೋಜಕ ಸೊಸೈಟಿಯಿಂದ ಸ್ವೀಕರಿಸಿದ ಪ್ರಸ್ತಾವಗಳನ್ನು ಪರೀಕ್ಷಿಸಲು ರಾಜ್ಯ ಸರ್ಕಾರವು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಪದನಿಮಿತ್ತ ಸದಸ್ಯರಾದ ಮೂರು ಸದಸ್ಯರುಗಳನ್ನು ಒಳಗೊಂಡ ಒಂದು ಶೋಧನಾ ಸಮಿತಿಯನ್ನು ರಚಿಸತಕ್ಕದ್ದು ಮತ್ತು ಅದು ವಿಶ್ವವಿದ್ಯಾಲಯದ ಸ್ಥಾಪನೆಗೆ ರಾಜ್ಯ ಸರ್ಕಾರಕ್ಕೆ ಶಿಫಾರಸ್ಸನ್ನು ಮಾಡತಕ್ಕದ್ದು.

**4. ವಿಶ್ವವಿದ್ಯಾಲಯದ ಸ್ಥಾಪನೆ.–** (1) ರಾಜ್ಯ ಸರ್ಕಾರವು ಶೋಧನಾ ಸಮಿತಿಯು ಮಾಡಿದ ಶಿಫಾರಸ್ಸುಗಳನ್ನು ಪರಿಶೀಲಿಸಿದ ತರುವಾಯ ಮತ್ತು ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ.–

(i) ಸೊಸೈಟಿಯು ಸಾಕಷ್ಟು ಮೂಲ ಸೌಕರ್ಯದೊಂದಿಗೆ ವಿಶ್ವವಿದ್ಯಾಲಯವೊಂದನ್ನು ನಡೆಸಲು ಸಮರ್ಥವಾಗಿದೆ ಎಂದು ಅದು ಮನಗಂಡರೆ;

(ii) ಪ್ರದೇಶಕ್ಕನುಸಾರವಾಗಿ ಕೆಳಗೆ ನಿರ್ದಿಷ್ಟ ಪಡಿಸಿದ ವ್ಯಾಪ್ತಿಗೆ ಭೂಮಿಯ ಒಡೆತನವನ್ನು ಹೊಂದಿರತಕ್ಕದ್ದು, ಎಂದರೆ:-

(ಎ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯೊಳಗಿದ್ದರೆ ಇಪ್ಪತ್ತೈದು ಎಕರೆಗಳು;

(ಬಿ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯಿಂದ ಹೊರಗೆ ಇದ್ದು, ಆದರೆ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಪ್ರದೇಶದ ಒಳಗೆ ಇದ್ದರೆ ನಲವತ್ತು ಎಕರೆಗಳು;

(ಸಿ) ಭೂಮಿಯು (ಎ) ಮತ್ತು (ಬಿ) ಖಂಡಗಳಲ್ಲಿ ನಿರ್ದಿಷ್ಟಪಡಿಸಿದ ಸ್ಥಳಗಳನ್ನು ಹೊರತುಪಡಿಸಿದ್ದರೆ ಅರವತ್ತು ಎಕರೆಗಳಿಗಿಂತ ಕಡಿಮೆ ಇರತಕ್ಕದ್ದಲ್ಲ.

ಮೇಲೆ ನಿರ್ದಿಷ್ಟಪಡಿಸಿದ ಭೂಮಿಯು ಏಕ ಘಟಕ (ಸಿಂಗಲ್ ಬ್ಲಾಕ್) ದಲ್ಲಿರತಕ್ಕದ್ದು ಮತ್ತು ಇದು ಸಂಬಂಧಪಟ್ಟ ಸೊಸೈಟಿ ಅಥವಾ ನ್ಯಾಸ ಅಥವಾ ಪ್ರತಿಷ್ಠಾನ ಅಥವಾ ಸಂಸ್ಥೆ ಅಥವಾ ವಿಶ್ವವಿದ್ಯಾಲಯದ ಹೆಸರಿನಲ್ಲಿರತಕ್ಕದ್ದು. 3ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ಅಗತ್ಯಪಡಿಸಲಾದಂತೆ ಒದಗಿಸಿದ ವಿವರಗಳ ಆಧಾರದ ಮೇಲೆ ಸರ್ಕಾರವು 47ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಬೇಕೆಂದು ನ್ಯಾಸಕ್ಕೆ ನಿರ್ದೇಶನ ನೀಡಬಹುದು.

(2) ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಸ್ಥಾಪನೆಯ ತರುವಾಯ, ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, "ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ವಿಶ್ವವಿದ್ಯಾಲಯ" ಎಂಬ ಹೆಸರಿನ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ರಾಜ್ಯದಲ್ಲಿ ಸ್ಥಾಪಿಸುವುದಕ್ಕೆ ಮಂಜೂರಾತಿಯನ್ನು ನೀಡಬಹುದು.

(3) ವಿಶ್ವವಿದ್ಯಾಲಯದ ಕೇಂದ್ರ ಕಾರ್ಯಸ್ಥಾನವು ಧಾರವಾಡದಲ್ಲಿ ಇರತಕ್ಕದ್ದು. ವಿಶ್ವವಿದ್ಯಾಲಯದ ಸ್ಥಾಪನೆಯ ಐದು ವರ್ಷಗಳ ತರುವಾಯ ವಿಶ್ವವಿದ್ಯಾಲಯವು ತನ್ನ ಕ್ಯಾಂಪಸ್ಸುಗಳನ್ನು ಅಥವಾ ಪ್ರಾದೇಶಿಕ ಕೇಂದ್ರಗಳನ್ನು, ಅಧ್ಯಯನ ಕೇಂದ್ರಗಳನ್ನು ಕರ್ನಾಟಕದ ಯಾವುದೇ ಭಾಗದಲ್ಲಿ ಹೊಂದಿರತಕ್ಕದ್ದು ಮತ್ತು ಆ ಬಗ್ಗೆ ರಾಜ್ಯ ಸರ್ಕಾರದ ಪೂರ್ವಾನುಮತಿಯನ್ನು ಪಡೆದುಕೊಳ್ಳುವುದಕ್ಕೊಳಪಟ್ಟು ಹಾಗೂ ವಿಶ್ವವಿದ್ಯಾಲಯ ಅನುದಾನಗಳ ಆಯೋಗದ ಗುಣಮಟ್ಟಗಳಿಗನುಸಾರವಾಗಿ ಹೊಂದಿರತಕ್ಕದ್ದು.

(4) ಮೊದಲ ಕುಲಾಧಿಪತಿಯವರು, ಮೊದಲ ಕುಲಪತಿಯವರು, ಪ್ರಬಂಧಕ ಮಂಡಳಿಯ ಮೊದಲ ಸದಸ್ಯರುಗಳು, ವ್ಯವಸ್ಥಾಪನಾ ಮಂಡಳಿಯ ಹಾಗೂ ಶೈಕ್ಷಣಿಕ ಪರಿಷತ್ತಿನ ಮೊದಲ ಸದಸ್ಯರುಗಳು ಮತ್ತು ಇನ್ನು ಮುಂದೆ, ಅಂಥ ಅಧಿಕಾರಿಗಳು ಅಥವಾ ಸದಸ್ಯರುಗಳಾಗಬಹುದಾದಂಥ ಎಲ್ಲಾ ವ್ಯಕ್ತಿಗಳು, ಅಂಥ ಪದ ಅಥವಾ ಸದಸ್ಯತ್ವವನ್ನು ಹೊಂದಿರುವುದು ಮುಂದುವರೆಯುವವರೆಗೆ, ಒಂದು ನಿಗಮಿತ ನಿಕಾಯವನ್ನು ರಚಿಸತಕ್ಕದ್ದು. ಮತ್ತು ಅದು ವಿಶ್ವವಿದ್ಯಾಲಯದ ಹೆಸರಿನಲ್ಲಿ ದಾವೆ ಹೂಡಬಹುದು ಮತ್ತು ದಾವೆಗೊಳಗಾಗಬಹುದು.

(5) (2)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯವು ಸ್ಥಾಪನೆಗೆ ಮಂಜೂರಾತಿಯಾದ ಮೇಲೆ, ವಿಶ್ವವಿದ್ಯಾಲಯದ ಉದ್ದೇಶಕ್ಕಾಗಿ, ನ್ಯಾಸವು ಆರ್ಜಿಸಿದ, ಸೃಜಿಸಿದ, ಏರ್ಪಾಟು ಮಾಡಿಕೊಂಡ ಅಥವಾ ಕಟ್ಟಲ್ಪಟ್ಟ ಭೂಮಿ ಮತ್ತು ಇತರ ಸ್ಥಿರ ಮತ್ತು ಚರ ಸ್ವತ್ತು, ವಿಶ್ವವಿದ್ಯಾಲಯದಲ್ಲಿ ನಿಹಿತವಾಗಿರತಕ್ಕದ್ದು.

(6) ವಿಶ್ವವಿದ್ಯಾಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದ ಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂಥ ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

(7) ವಿಶ್ವವಿದ್ಯಾಲಯದಲ್ಲಿನ ಭೂಮಿ, ಕಟ್ಟಡ ಮತ್ತು ಇತರ ಸ್ವತ್ತುಗಳನ್ನು ವಿಶ್ವವಿದ್ಯಾಲಯದ ಉದ್ದೇಶಗಳಿಗೆ ಆನುಷಂಗಿಕವಾಗಿರುವುದನ್ನು ಹೊರತುಪಡಿಸಿ ಇತರ ಯಾವುದೇ ಉದ್ದೇಶಕ್ಕಾಗಿ ಬಳಸತಕ್ಕದ್ದಲ್ಲ.

**5. ಅನುದಾನಗಳು ಮತ್ತು ಹಣಕಾಸು ನೆರವು.-** ವಿಶ್ವವಿದ್ಯಾಲಯವು ಸ್ವಂತ ಧನಮೂಲವುಳ್ಳ ಲಾಭರಹಿತ ಸಂಸ್ಥೆಯಾಗಿರತಕ್ಕದ್ದು ರಾಜ್ಯದಿಂದ ಅಥವಾ ರಾಜ್ಯದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಇತರ ಸಂಸ್ಥೆ ಅಥವಾ ನಿಗಮದಿಂದ ಯಾವುದೇ ನಿರ್ವಹಣಾ ಸಹಾಯ ಅನುದಾನ ಅಥವಾ ಯಾವುದೇ ಹಣಕಾಸು ನೆರವನ್ನು ಹಕ್ಕಿನಿಂದ ಕೇಳತಕ್ಕದ್ದಲ್ಲ ಅಥವಾ ಅದನ್ನು ಪಡೆಯಲು ಹಕ್ಕನ್ನು ಹೊಂದಿರತಕ್ಕದ್ದಲ್ಲ:

ಪರಂತು, ರಾಜ್ಯ -

(ಎ) ಇತರ ರಾಜ್ಯ ಸರ್ಕಾರದ ಸಂಘಟನೆಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿರುವಂಥದ್ದೇ ಸಂಶೋಧನೆ, ಅಭಿವೃದ್ಧಿ ಮತ್ತಿತರ ಚಟುವಟಿಕೆಗಳಿಗಾಗಿ; ಅಥವಾ

(ಬಿ) ರಾಜ್ಯ ಸರ್ಕಾರದಿಂದ ನೆರವನ್ನು ಪಡೆಯುವ ಯಾವುದೇ ನಿರ್ದಿಷ್ಟ ಸಂಶೋಧನೆ ಅಥವಾ ಕಾರ್ಯಕ್ರಮಗಳಿಗಾಗಿ; ಮತ್ತು

(ಸಿ) ರಾಜ್ಯ ಕಾರ್ಯನೀತಿಯ ಬದಲಾವಣೆಗೆ ಒಳಪಟ್ಟು ಅಥವಾ ಅನ್ಯಥಾ ಇದೇ ಬಗೆಯ ವಿಶ್ವವಿದ್ಯಾಲಯಗಳಿಗೆ ಅವಕಾಶವನ್ನು ಕಲ್ಪಿಸುವುದಕ್ಕೆ ಅಥವಾ ಅವುಗಳ ಪ್ರಯೋಜನಕ್ಕಾಗಿ,

– ಅನುದಾನದ ಮೂಲಕ ಅಥವಾ ಅನ್ಯಥಾ ಹಣಕಾಸು ಬೆಂಬಲವನ್ನು ಒದಗಿಸಬಹುದು:

ಮತ್ತು ಪರಂತು, ವಿಶ್ವವಿದ್ಯಾಲಯವು, ಯಾವುದೇ ಇತರ ಮೂಲದಿಂದ ಯಾವುದೇ ಆರ್ಥಿಕ ನೆರವನ್ನು ಸ್ವೀಕರಿಸಬಹುದು.

**6. ಘಟಕ ಕಾಲೇಜು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಅಥವಾ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದಕ್ಕೆ ಅಧಿಕಾರ.**– ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಐದು ವರ್ಷಗಳನ್ನು ಪೂರ್ಣಗೊಳಿಸಿದ ನಂತರ, ವಿಶ್ವವಿದ್ಯಾಲಯ ಅನುದಾನ ಆಯೋಗದ ಮತ್ತು ಇತರ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ಗುಣಮಟ್ಟಗಳಿಗೆ ಒಳಪಟ್ಟು, ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ, ವಿಶ್ವವಿದ್ಯಾಲಯವು, ರಾಜ್ಯದಲ್ಲಿ ತನಗೆ ಸೂಕ್ತವೆನಿಸುವಂಥ ಸ್ಥಳಗಳಲ್ಲಿ ಘಟಕ ಕಾಲೇಜುಗಳು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದಿರಬಹುದು.

**7. ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು.**– ವಿಶ್ವವಿದ್ಯಾಲಯವು, ತನ್ನ ಭವಿಷ್ಯದ್‌ದೃಷ್ಟಿ ಮತ್ತು ಧ್ಯೇಯೋದ್ದೇಶಗಳನ್ನು ಸಾಧಿಸಲು ಈ ಮುಂದಿನಂತೆ ವಿವಿಧ ಬಗೆಯ ಕಾರ್ಯತಂತ್ರಗಳನ್ನು ಕೈಗೊಳ್ಳಬಹುದು:–

(i) ಮಾನವಿಕಗಳು, ಭಾಷೆಗಳು, ಜೀವ, ದೈಹಿಕ ಮತ್ತು ಸಂಬಂಧಿತ ವಿಜ್ಞಾನ, ಗಣಕ ವಿಜ್ಞಾನ, ಮಾಹಿತಿ ತಂತ್ರಜ್ಞಾನ, ಇಂಜಿನಿಯರಿಂಗ್, ತಾಂತ್ರಿಕ ಕೋರ್ಸುಗಳು, ವೈದ್ಯಕೀಯ ವಿಜ್ಞಾನಗಳು ಮತ್ತು ಸಂಬಂಧಿತ ವಿಭಾಗ, ವಾಣಿಜ್ಯ ಮತ್ತು ವ್ಯವಹಾರ ವ್ಯವಸ್ಥಾಪನೆಗಳಲ್ಲಿ ಪದವಿ, ಸ್ನಾತಕೋತ್ತರ, ಡಾಕ್ಟೊರಲ್ ಮತ್ತು ಪೋಸ್ಟ್ ಡಾಕ್ಟೊರಲ್ ಕೋರ್ಸುಗಳಿಗೆ ಮುಂದುವರಿಯುವ ಮತ್ತು ಅವುಗಳನ್ನು ಒಳಗೊಳ್ಳುವ ವಿಶ್ವವಿದ್ಯಾಲಯ ಶಿಕ್ಷಣದಲ್ಲಿ ಪ್ರಗತಿಯನ್ನು ಮತ್ತು ಅನ್ವೇಷಣೆಯನ್ನು ಬೆಂಬಲಿಸುವುದು, ಪ್ರೋತ್ಸಾಹಿಸುವುದು ಮತ್ತು ಕೈಗೊಳ್ಳುವುದು ಹಾಗೂ ಈ ಕ್ಷೇತ್ರಗಳಲ್ಲಿ ಸಲಹೆಯನ್ನೂ ಒಳಗೊಂಡಂತೆ ಸಂಶೋಧನೆ, ಪ್ರಗತಿ ಮತ್ತು ಜ್ಞಾನ ಪ್ರಸಾರಕ್ಕೆ ಉಪಬಂಧಗಳನ್ನು ಕಲ್ಪಿಸುವುದು;

(ii) ವಿದ್ಯಾರ್ಥಿಗಳಿಗೆ, ಬೋಧಕ ವೃಂದದ (ಫ್ಯಾಕಲ್ಟಿ) ಸದಸ್ಯರಿಗೆ ಮತ್ತು ಇತರರಿಗೆ ನಿರ್ದಿಷ್ಟ ಶೈಕ್ಷಣಿಕ ಮತ್ತು ಸಂಶೋಧನಾ ಕಾರ್ಯಕ್ರಮಗಳನ್ನು, ತರಬೇತಿ ಕಾರ್ಯಕ್ರಮಗಳನ್ನು ಮತ್ತು ವಿನಿಮಯ ಕಾರ್ಯಕ್ರಮಗಳನ್ನು ಪರಿಕಲ್ಪಿಸಲು, ವಿನ್ಯಾಸಗೊಳಿಸಲು, ಅಭಿವೃದ್ಧಿಪಡಿಸಲು ಇತರ ಯಾವುದೇ ವಿಶ್ವವಿದ್ಯಾಲಯಗಳು, ಸಂಶೋಧನಾ ಸಂಸ್ಥೆಗಳು, ಲಾಭರಹಿತ ಸಂಸ್ಥೆಗಳು, ಕೈಗಾರಿಕಾ ಸಂಸ್ಥೆಗಳು, ವೃತ್ತಿಪರ ಸಂಸ್ಥೆಗಳು ಅಥವಾ ಇತರ ಸಂಸ್ಥೆಗಳೊಂದಿಗೆ ಸಹಯೋಗವನ್ನು ಹೊಂದುವುದು;

(iii) ರಾಜ್ಯ ಸರ್ಕಾರದ ಪೂರ್ವ ಅನುಮೋದನೆಯೊಡನೆ, ಯಾವುದೇ ಸಂಸ್ಥೆಯೊಂದಿಗೆ ಸಹಯೋಗ ಹೊಂದಿ ಸಂಶೋಧನೆಯನ್ನು ಮತ್ತು ಹೊಸತನವನ್ನು ಬೆಳಕಿಗೆ ತರುವುದು;

(iv) ತಾನು ಸೂಕ್ತವೆಂದು ಭಾವಿಸಬಹುದಾದಂತೆ, ಕಲಿಕೆಯ ಅಂಥ ಶಾಖೆಗಳಲ್ಲಿ ಬೋಧನಾ ಮತ್ತು ಸಂಶೋಧನಾ ಸೌಲಭ್ಯಗಳನ್ನು ಒದಗಿಸಿ ಜ್ಞಾನ ಪ್ರಸಾರ ಮಾಡುವುದು ಮತ್ತು ಅದನ್ನು ಮುಂದುವರೆಸುವುದು ಹಾಗೂ ವಿಶೇಷವಾಗಿ ಪ್ರಸ್ತಾವಿತ ಕ್ಷೇತ್ರಗಳ ಸಂಬಂಧಿತ ಕೋರ್ಸುಗಳಲ್ಲಿ ಸಮಗ್ರ ವ್ಯಾಸಂಗ ವಿಷಯಗಳಿಗಾಗಿ ವಿಶೇಷ ಉಪಬಂಧ ಕಲ್ಪಿಸುವುದು ಮತ್ತು ವಿಶ್ವವಿದ್ಯಾಲಯದ ಅಂಥ ಇತರ ಉನ್ನತ ಶೈಕ್ಷಣಿಕ ಕಾರ್ಯಕ್ರಮಗಳಿಗಾಗಿ ಅಂತರವಿದ್ಯಾವಿಷಯಗಳ ಅಧ್ಯಯನ ಮತ್ತು ಸಂಶೋಧನೆಗೆ ಉತ್ತೇಜನ ನೀಡುವುದಕ್ಕೆ ಸೂಕ್ತ ಕ್ರಮ ಕೈಗೊಳ್ಳುವುದು;

(v) ಉನ್ನತ ಕಲಿಕೆಗೆ ಪ್ರವೇಶಾವಕಾಶಗಳನ್ನು ಮತ್ತು ನ್ಯಾಯಸಮ್ಮತತೆಗೆ ಉತ್ತೇಜನ ನೀಡುವ ದೃಷ್ಟಿಯಿಂದ, ಕಲಿಕೆಯ ವಿಧಾನಗಳು ಮತ್ತು ಸ್ಥಳಗಳು, ವ್ಯಾಸಂಗ ಕ್ರಮಗಳ ಸಂಯೋಜನೆ, ದಾಖಲಾತಿಗಾಗಿ ಅರ್ಹತೆ, ಪ್ರವೇಶದ ವಯಸ್ಸು, ಪರೀಕ್ಷೆಯನ್ನು ನಡೆಸುವುದು ಮತ್ತು ಕಾರ್ಯಕ್ರಮಗಳ ನಿರ್ವಹಣೆಗೆ ಸಂಬಂಧಿಸಿದಂತೆ ನಮ್ಯವಾದ (ಫ್ಲೆಕ್ಸಿಬಲ್) ಮತ್ತು ಮುಕ್ತವಾದ, ವಿಶ್ವವಿದ್ಯಾಲಯ ಮಟ್ಟದ ಶಿಕ್ಷಣದ ಅನ್ವೇಷಣಾ ಪದ್ಧತಿಯನ್ನು ಅಳವಡಿಸುವುದು ಹಾಗೂ ಜ್ಞಾನದ ಹೊಸ ಕ್ಷೇತ್ರಗಳಲ್ಲಿ ಉತ್ಕೃಷ್ಟತೆಗೆ

ಪ್ರೋತ್ಸಾಹಿಸುವುದು, ಶೈಕ್ಷಣಿಕ ಮತ್ತು ಸಮನ್ವಯ ಕಲಿಕೆ, ಇವೆರೆಡಕ್ಕೂ ಸಮನಾದ ಪ್ರಾಮುಖ್ಯತೆಯನ್ನು ನೀಡುವುದು;

(vi) ಗುಣಮಟ್ಟದ ಶಿಕ್ಷಣಕ್ಕಾಗಿ ಕೊಡುಗೆಯನ್ನು ನೀಡಲು ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಸಂಪನ್ಮೂಲ ಕೇಂದ್ರಗಳನ್ನು ಅಭಿವೃದ್ಧಿಪಡಿಸುವುದು;

(vii) ವಿಶ್ವವಿದ್ಯಾಲಯದ ಸ್ಥಾಪನೆಯ ಐದು ವರ್ಷಗಳ ತರುವಾಯ ಕರ್ನಾಟಕದಲ್ಲಿ ವಿವಿಧ ಸ್ಥಳಗಳಲ್ಲಿ ಕ್ಯಾಂಪಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳು ಮತ್ತು ಘಟಕ ಕಾಲೇಜುಗಳನ್ನು ಸ್ಥಾಪಿಸುವುದು ಮತ್ತು ತಾಂತ್ರಿಕತೆ, ವೃತ್ತಿಪರತೆ, ಸಾಮಾನ್ಯ ಶಿಕ್ಷಣ ಮತ್ತು ಸಮಾಜ ಮತ್ತು ಮಾನವ ಅಭಿವೃದ್ಧಿಯಲ್ಲಿ ಶೈಕ್ಷಣಿಕ ಬದಲಾವಣೆಗೆ ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಕೊಡುಗೆ ನೀಡುವುದು ಮತ್ತು ಜ್ಞಾನವನ್ನು ಅಭಿವೃದ್ಧಿಪಡಿಸುವುದು;

(viii) ಮೌಲ್ಯಮಾಪನದ ವಿವಿಧ ಆಧುನಿಕ ವಿಧಾನಗಳ ಮೂಲಕ ಮಾಡಿದ ಮೌಲ್ಯಮಾಪನಕ್ಕೆ ಅನುಸಾರವಾಗಿ ಶಿಕ್ಷಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದುದರ ಆಧಾರದ ಮೇಲೆ ನೀಡಲು ಪದವಿಗಳನ್ನು, ಡಿಪ್ಲೋಮೋಗಳನ್ನು, ಪ್ರಮಾಣಪತ್ರಗಳನ್ನು ಮತ್ತು ಯಶೋಪತ್ರ ಪ್ರದಾನದಂಥ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(ix) ಉಪನ್ಯಾಸ ಮಾಲಿಕೆಗಳು, ವಿಚಾರ ಸಂಕಿರಣಗಳು, ಸಮ್ಮೇಳನಗಳು, ಕಾರ್ಯಾಂಗ ಶಿಕ್ಷಣ ಕಾರ್ಯಕ್ರಮಗಳು, ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳು, ಪ್ರಕಟಣೆಗಳು ಮತ್ತು ತರಬೇತಿ ಕಾರ್ಯಕ್ರಮಗಳು ಮತ್ತು ಕಾರ್ಯಸೂಚಿಗಳ ಮೂಲಕ ಜ್ಞಾನ ಪ್ರಸಾರ ಮಾಡುವುದು ಮತ್ತು ಶಿಕ್ಷಣ ಮತ್ತು ತತ್ಸಂಬಂಧಿತ ಅಭಿವೃದ್ಧಿ ಕ್ಷೇತ್ರಗಳ ವಿಷಯಗಳ ಬಗ್ಗೆ ಸಾರ್ವಜನಿಕ ಚರ್ಚೆಯನ್ನು ಏರ್ಪಡಿಸುವುದು;

(x) ರಾಜ್ಯ ಸರ್ಕಾರದ ಪೂರ್ವ ಅನುಮತಿಯೊಂದಿಗೆ, ಉತ್ತಮ ಗುಣಮಟ್ಟದ ಇತರ ಯಾವುವೇ ವಿಶ್ವವಿದ್ಯಾಲಯಗಳೊಂದಿಗೆ ಸಹಭಾಗಿಗಳಾಗಿ ವಿಶ್ವವಿದ್ಯಾಲಯದ ಬೋಧಕ ವೃಂದ (ಫ್ಯಾಕಲ್ಟಿ) ಮತ್ತು ಸಂಶೋಧಕರ ಅಭಿವೃದ್ಧಿ ಮತ್ತು ತರಬೇತಿಗಾಗಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು;

(xi) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದಕ್ಕಾಗಿ ಮತ್ತು ಉತ್ತೇಜಿಸುವುದಕ್ಕಾಗಿ ಅವಶ್ಯಕವಾದ ಮತ್ತು ಯುಕ್ತವಾದ ಕ್ರಮಗಳನ್ನು ಕೈಗೊಳ್ಳುವುದು;

(xii) ಭಾರತದಲ್ಲಿ ಶಿಕ್ಷಣ ಮತ್ತು ಇತರ ಅಭಿವೃದ್ಧಿ ವಲಯಗಳನ್ನು ವಿಸ್ತರಿಸುವುದಕ್ಕಾಗಿ ಸರ್ಕಾರವು ಅನುಮೋದಿಸಬಹುದಾದಂತೆ ಯಾವುವೇ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದು.

**8. ವಿಶ್ವವಿದ್ಯಾಲಯದ ಅಧಿಕಾರಗಳು.–** ವಿಶ್ವವಿದ್ಯಾಲಯವು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗೆ ಅನುಸಾರವಾಗಿ ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿರ್ಧರಿಸಬಹುದಾದಂತೆ ವಿಶ್ವವಿದ್ಯಾಲಯದ ಸ್ಥಾಪನೆಯ ದಿನಾಂಕದಿಂದ ಐದು ವರ್ಷಗಳ ತರುವಾಯ ಕ್ಯಾಂಪಸ್ಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಕರ್ನಾಟಕದಲ್ಲಿ ಸ್ಥಾಪಿಸುವುದು ಮತ್ತು ನಿರ್ವಹಿಸುವುದು;

(ii) ವಿಶ್ವವಿದ್ಯಾಲಯದ ಉದ್ದೇಶವನ್ನು ಕಾರ್ಯರೂಪಕ್ಕೆ ತರುವಲ್ಲಿ ಅಗತ್ಯವಾಗಬಹುದಾದ ಅಥವಾ ಕಾರ್ಯಸಾಧ್ಯವಾಗಬಹುದಾದ ಎಲ್ಲಾ ಅಂಥ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು;

(iii) ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಮತ್ತು ಷರತ್ತುಗಳಿಗೊಳಪಟ್ಟು ಪದವಿಗಳು ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರದಾನಮಾಡುವುದು;

(iv) ಪರಿನಿಯಮಗಳನ್ವಯ ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು). ವಿದ್ಯಾರ್ಥಿ ವೇತನಗಳು ಮತ್ತು ಬಹುಮಾನಗಳು, ಅವಾರ್ಡುಗಳು, ಪಾರಿತೋಷಕಗಳು ಇತ್ಯಾದಿಗಳನ್ನು ಸ್ಥಾಪಿಸುವುದು ಮತ್ತು ನೀಡುವುದು;

(v) ಪರಿನಿಯಮಗಳಲ್ಲಿ ಅಥವಾ ಸಂದರ್ಭಾನುಸಾರವಾಗಿ ನಿಯಮಗಳಲ್ಲಿ ನಿಗದಿಪಡಿಸಬಹುದಾದ ಅಂಥ ಶುಲ್ಕಗಳು, ಬಿಲ್ಲುಗಳು, ಖರೀದಿ ಪಟ್ಟಿಗಳನ್ನು ಕೇಳಿಪಡೆದುಕೊಳ್ಳುವುದು ಮತ್ತು ಸ್ವೀಕರಿಸುವುದು ಹಾಗೂ ಚಾರ್ಜುಗಳನ್ನು ವಸೂಲು ಮಾಡುವುದು:

ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಪಠ್ಯೇತರ ಚಟುವಟಿಕೆಗಳ ಅವಕಾಶಗಳನ್ನು ಕಲ್ಪಿಸುವುದು;

(vii) ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಕ್ಯಾಂಪಸುಗಳ, ಪ್ರಾದೇಶಿಕ ಕೇಂದ್ರಗಳ, ಅಧ್ಯಯನ ಕೇಂದ್ರಗಳ ಫ್ಯಾಕಲ್ಟಿ, ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವುದು;

(viii) ವಿಶ್ವವಿದ್ಯಾಲಯದ ಅಥವಾ ಒಂದು ಘಟಕ ಕಾಲೇಜಿನ ಅಥವಾ ಕ್ಯಾಂಪಸ್ಸಿನ, ಪ್ರಾದೇಶಿಕ ಕೇಂದ್ರದ ಮತ್ತು ಅಧ್ಯಯನ ಕೇಂದ್ರದ ಉದ್ದೇಶಕ್ಕಾಗಿ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದಿರುವ, ಯಾವುದೇ ರೀತಿಯ ಸ್ವಯಂ ದೇಣಿಗೆಗಳು ಮತ್ತು ಕೊಡುಗೆಗಳನ್ನು ಸ್ವೀಕರಿಸುವುದು ಮತ್ತು ನ್ಯಾಸ ಮತ್ತು ದತ್ತಿ ಸ್ವತ್ತುಗಳೂ ಸೇರಿದಂತೆ, ಯಾವುದೇ ಚರ ಅಥವಾ ಸ್ಥಿರ ಸ್ವತ್ತನ್ನು ಆರ್ಜಿಸುವುದು, ಹೊಂದಿರುವುದು, ನಿರ್ವಹಿಸುವುದು, ನಡೆಸುವುದು ಮತ್ತು ಹಸ್ತಾಂತರ ಮಾಡುವುದು;

(ix) ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸಿಕೊಂಡು ಬರುವುದು ಹಾಗೂ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ ವಿದ್ಯಾರ್ಥಿಗಳಿಗೆ ವಸತಿ ಸ್ಥಳಗಳಾಗಿ ಮಾನ್ಯತೆ ನೀಡುವುದು;

(x) ವಸತಿಯ ಮೇಲ್ವಿಚಾರಣೆ ಮಾಡುವುದು ಮತ್ತು ನಿಯಂತ್ರಣ ಮಾಡುವುದು ಹಾಗೂ ವಿದ್ಯಾರ್ಥಿಗಳು ಮತ್ತು ಎಲ್ಲಾ ಪ್ರವರ್ಗಗಳ ಸಿಬ್ಬಂದಿಗಳಲ್ಲಿ ಶಿಸ್ತು ನಿಯಂತ್ರಣ ಮಾಡುವುದು ಮತ್ತು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ನಡತೆ ಸಂಹಿತೆಯನ್ನು ರೂಪಿಸುವುದೂ ಒಳಗೊಂಡಂತೆ, ಅಂಥ ಸಿಬ್ಬಂದಿಗಳ ಸೇವಾಷರತ್ತುಗಳನ್ನು ನಿರೂಪಿಸುವುದು;

(xi) ಶೈಕ್ಷಣಿಕ, ಆಡಳಿತಾತ್ಮಕ ಮತ್ತು ಬೆಂಬಲ ಸಿಬ್ಬಂದಿಯ ಹುದ್ದೆಗಳನ್ನು ಮತ್ತು ಇತರ ಅವಶ್ಯ ಹುದ್ದೆಗಳನ್ನು ಸೃಜಿಸುವುದು;

(xii) ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ಉದ್ದೇಶಗಳಿಗಾಗಿ ಇತರ ವಿಶ್ವವಿದ್ಯಾಲಯಗಳೊಡನೆ ಸಹಕರಿಸುವುದು ಮತ್ತು ಸಹಯೋಗ ಹೊಂದುವುದು;

(xiii) ಶಿಕ್ಷಕರಿಗೆ, ಪಾಠಗಳನ್ನು ರಚಿಸುವವರಿಗೆ, ಮೌಲ್ಯಮಾಪಕರಿಗೆ ಮತ್ತಿತರ ಶೈಕ್ಷಣಿಕ ಸಿಬ್ಬಂದಿಗೆ ಪುನರ್ಮನನ ವ್ಯಾಸಂಗಕ್ರಮಗಳು, ಅಭಿಮುಖಿ ವ್ಯಾಸಂಗ ಕ್ರಮಗಳು, ಕಾರ್ಯಾಗಾರಗಳು, ವಿಚಾರಗೋಷ್ಠಿಗಳು ಮತ್ತಿತರ ಕಾರ್ಯಕ್ರಮಗಳನ್ನು ಏರ್ಪಡಿಸುವುದು ಮತ್ತು ನಡೆಸುವುದು;

(xiv) ಶೈಕ್ಷಣಿಕ ಪರಿಷತ್ತಿನ ಅನುಮೋದನೆಯೊಂದಿಗೆ ವಿಶ್ವವಿದ್ಯಾಲಯಕ್ಕೆ ಅಥವಾ ಘಟಕ ಕಾಲೇಜಿಗೆ, ಪ್ರಾದೇಶಿಕ ಕೇಂದ್ರಗಳಿಗೆ, ಅಧ್ಯಯನ ಕೇಂದ್ರಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮತ್ತು ಈ ಅಧಿನಿಯಮದಲ್ಲಿ ಕಲ್ಪಿಸಿದ ವ್ಯಾಪ್ತಿಗಿಂತ ಕಡಿಮೆಯಿಲ್ಲದಂತೆ ಕರ್ನಾಟಕದ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮಾನಕ ಗುಣಮಟ್ಟಗಳನ್ನು ನಿರ್ಧರಿಸುವುದು;

(xv) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಕಾರ್ಯರೂಪಕ್ಕೆ ತರಲು ಅವಶ್ಯವಾಗಬಹುದಾದಂಥ ಇತರ ಎಲ್ಲಾ ಕ್ರಮಗಳನ್ನು ಅಥವಾ ಕಾರ್ಯಗಳನ್ನು, ಅವು ಮೇಲೆ ಹೇಳಿದ ಅಧಿಕಾರಗಳಿಗೆ ಪ್ರಾಸಂಗಿಕವಾಗಿರಲಿ ಅಥವಾ ಇಲ್ಲದಿರಲಿ, ಕೈಗೊಳ್ಳುವುದು;

(xvi) ಪರೀಕ್ಷೆಗಳ ಆಧಾರದ ಮೇಲೆ ಅಥವಾ ಸರ್ಕಾರದಿಂದ ಅನುಮೋದಿತವಾದ ಇತರ ಯಾವುದೇ ಮೌಲ್ಯಮಾಪನ ವಿಧಾನದ ಆಧಾರದ ಮೇಲೆ ನೀಡಲು ಪದವಿಗಳು, ಡಿಪ್ಲೋಮಾಗಳು, ಪ್ರಮಾಣಪತ್ರಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಸ್ಥಾಪಿಸುವುದು;

(xvii) ಫಿಲಂಗಳು, ಕ್ಯಾಸೆಟ್‌ಗಳು, ಧ್ವನಿಸುರುಳಿಗಳು, ದೃಶ್ಯಸುರುಳಿಗಳು, ಸಿ.ಡಿ., ವಿ.ಸಿ.ಡಿ. ಮತ್ತು ಇತರ ತಂತ್ರಾಂಶಗಳೂ ಹಾಗೂ ಇತರ ಸಂಬಂಧಿತ ವಿದ್ಯುನ್ಮಾನ ಮತ್ತು ಮುದ್ರಣ ಮಾಧ್ಯಮ ಸೇರಿದಂತೆ ಬೋಧಕ ಸಾಮಗ್ರಿಗಳನ್ನು ತಯಾರಿಸುವುದಕ್ಕಾಗಿ ಅವಕಾಶ ಕಲ್ಪಿಸುವುದು;

(xviii) ಪ್ರಬಂಧಕ ಮಂಡಳಿಯ ಅನುಮೋದನೆಯೊಡನೆ ವಿಶ್ವವಿದ್ಯಾಲಯದ ಉದ್ದೇಶಗಳಿಗಾಗಿ ವಿಶ್ವವಿದ್ಯಾಲಯದ ಸ್ವತ್ತುಗಳನ್ನು ಭದ್ರತೆಯಾಗಿ ನೀಡಿ ಅಥವಾ ನೀಡದೆ ಹಣವನ್ನು ಪಡೆಯುವುದು, ಸಂಗ್ರಹಿಸುವುದು, ಚಂದಾದಾರರಾಗುವುದು ಮತ್ತು ಸಾಲ ಪಡೆಯುವುದು;

(xix) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುದೇ ಇತರ ಶೈಕ್ಷಣಿಕ ಸಂಸ್ಥೆಗಳ ಆಡಳಿತವನ್ನು ವಶಪಡಿಸಿಕೊಳ್ಳುವುದು, ವಹಿಸಿಕೊಳ್ಳುವುದು ಮತ್ತು ನಡೆಸುವುದು;

(xx) ಕಾರ್ಯಕಾರಿ ಪರಿಷತ್ತು ಪೂರ್ವಾನುಮೋದನೆಯೊಂದಿಗೆ ಸ್ವತ್ತುಗಳನ್ನು ಆರ್ಜಿಸುವುದು

(xxi) ವಿಶ್ವವಿದ್ಯಾಲಯದ ಮೇಲಿನ ಉದ್ದೇಶಗಳಿಗೆ ಸಂಬಂಧಿಸಿದ ಅಥವಾ ಪ್ರಾಸಂಗಿಕವಾದ ಯಾವುದೇ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು.

**9. ವಿಶ್ವವಿದ್ಯಾಲಯವು ಎಲ್ಲಾ ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲರಿಗೂ ಮುಕ್ತವಾಗಿರತಕ್ಕದ್ದು.**– ವಿಶ್ವವಿದ್ಯಾಲಯದ ಪ್ರವೇಶಗಳು ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲಾ ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು. ಎಲ್ಲಾ ಪ್ರವೇಶಗಳನ್ನು ಅರ್ಹತಾ ಪರೀಕ್ಷೆಗಳಲ್ಲಿನ ಅರ್ಹತೆಯ ಆಧಾರದ ಮೇಲೆ ಮಾಡತಕ್ಕದ್ದು:

ಪರಂತು, ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳ ಪ್ರವೇಶದಲ್ಲಿ ಶೇಕಡಾ ನಲವತ್ತರಷ್ಟನ್ನು ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ಮೀಸಲಿಡತಕ್ಕದ್ದು ಮತ್ತು ಪ್ರವೇಶಗಳನ್ನು ರಾಜ್ಯ ಸರ್ಕಾರವು ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡತಕ್ಕದ್ದು ಮತ್ತು ಸೀಟುಗಳನ್ನು ಅರ್ಹತ ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ರೂಪಿಸುವ ಮೀಸಲಾತಿ ನೀತಿಗೆ ಅನುಸಾರವಾಗಿ ಹಂಚಿಕೆ ಮಾಡತಕ್ಕದ್ದು:

ಮತ್ತು ಪರಂತು, ಯಾವುದೇ ಕೋರ್ಸಿನಲ್ಲಿ ಹತ್ತಕ್ಕಿಂತ ಕಡಿಮೆ ಸೀಟುಗಳು ಇರುವಲ್ಲಿ, ಸ್ನಾತಕೋತ್ತರ ಇಂಥ ಕೋರ್ಸುಗಳನ್ನು ಒಟ್ಟಿಗೆ ಒಂದುಗೂಡಿಸುವ ಮೂಲಕ ಮೀಸಲಿಡತಕ್ಕದ್ದು ಮತ್ತು ಯಾವುದೇ ಕೋರ್ಸಿನಲ್ಲಿ ಮೂರು ಸೀಟುಗಳಿಗಿಂತ ಕಡಿಮೆ ಇರುವಲ್ಲಿ, ಅವುಗಳನ್ನು ಸರದಿ ಸುತ್ತಿನಲ್ಲಿ ಮೀಸಲಿಡತಕ್ಕದ್ದು.

**10. ರಾಷ್ಟ್ರೀಯ ಅಧಿಮಾನ್ಯತೆ.**– ವಿಶ್ವವಿದ್ಯಾಲಯವು ಪ್ರಾರಂಭವಾದ ತರುವಾಯ ಆದಷ್ಟು ಬೇಗನೆ ಸಂಬಂಧಪಟ್ಟ ಶಾಸನಾತ್ಮಕ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳಿಂದ ಅಧಿಮಾನ್ಯತೆಯನ್ನು ಕೋರತಕ್ಕದ್ದು ಮತ್ತು ಖಾಸಗಿ ವಿಶ್ವವಿದ್ಯಾಲಯಗಳು ನಡೆಸುವ ಎಲ್ಲಾ ವ್ಯಾಸಂಗ ಕ್ರಮಗಳು ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ವಿನಿಯಮಗಳಿಗೆ ಅನುಸಾರವಾಗಿ ಇರತಕ್ಕದ್ದು.

**11. ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು.**– ಪ್ರಾಯೋಜಕ ಸಂಸ್ಥೆಯು ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದಂತೆ ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಇವುಗಳಲ್ಲಿ ಪ್ರತಿಯೊಂದನ್ನು ಪ್ರಾಯೋಜಕ ಸಂಸ್ಥೆಯು ತನ್ನ ವಿವೇಚನಾನುಸಾರ ಚಲಾಯಿಸಬಹುದು, ಎಂದರೆ:–

(i) ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಪುನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(ii) ವಿಶ್ವವಿದ್ಯಾಲಯದ ಪ್ರಥಮ ಪ್ರಬಂಧಕ ಮಂಡಳಿಯನ್ನು ರಚಿಸುವುದು;

(iii) ಪ್ರಬಂಧಕ ಮಂಡಳಿಯ ಅಧ್ಯಕ್ಷರನ್ನು ನಾಮನಿರ್ದೇಶಿಸುವುದು;

(iv) ಪ್ರಬಂಧಕ ಮಂಡಳಿಯ ಸದಸ್ಯರಾಗಿ ಮೂರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(v) ಕಾರ್ಯಕಾರಿ ಪರಿಷತ್ತಿನ ಸದಸ್ಯರಾಗಿ ಇಬ್ಬರು ವ್ಯಕ್ತಿಗಳನ್ನು ನಾಮ ನಿರ್ದೇಶಿಸುವುದು;

(vi) ವಿಶ್ವವಿದ್ಯಾಲಯದ ದತ್ತಿ ನಿಧಿಗೆ ದೇಣಿಗೆ ನೀಡಲು ನಿಧಿ ಮೂಲಗಳನ್ನು ನಿರ್ಧರಿಸುವುದು;

(vii) ವಿಶ್ವವಿದ್ಯಾಲಯದ ಹಣದ ವಿನಿಯೋಗ ಮತ್ತು ವೆಚ್ಚ ಮಾಡುವುದನ್ನು ನಿರ್ಧರಿಸುವುದು;

(viii) ಈ ಅಧಿನಿಯಮದಲ್ಲಿ ಉಪಬಂಧಿಸಿರುವ ವಿಧಾನದಲ್ಲಿ ಪ್ರಬಂಧಕ ಮಂಡಳಿಯ ಸಭೆಯಲ್ಲಿಯ ವಿವಾದಗಳನ್ನು ಬಗೆಹರಿಸುವುದು;

## ಅಧ್ಯಾಯ – III
## ವಿಶ್ವವಿದ್ಯಾಲಯದ ಅಧಿಕಾರಿಗಳು

12. ವಿಶ್ವವಿದ್ಯಾಲಯದ ಅಧಿಕಾರಿಗಳು.– ಈ ಮುಂದಿನವರು ವಿಶ್ವವಿದ್ಯಾಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:–

(i) ಸಂದರ್ಶಕರು;

(ii) ಸಹ–ಸಂದರ್ಶಕರು;

(iii) ಕುಲಾಧಿಪತಿಗಳು;

(iv) ಕುಲಪತಿಗಳು;

(v) ಸಹಕುಲಪತಿಗಳು;

(vi) ಕುಲಸಚಿವರು

(vii) ಹಣಕಾಸು ಅಧಿಕಾರಿ; ಮತ್ತು

(viii) ಪರಿನಿಯಮಗಳ ಮೂಲಕ ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಘೋಷಿಸಬಹುದಾದಂಥ ಇತರ ಅಧಿಕಾರಿಗಳು.

**13. ಸಂದರ್ಶಕರು.–** (1) ಕರ್ನಾಟಕದ ಘನತೆವೆತ್ತ ರಾಜ್ಯಪಾಲರು ವಿಶ್ವವಿದ್ಯಾಲಯದ ಸಂದರ್ಶಕರಾಗಿರತಕ್ಕದ್ದು ಮತ್ತು ಸಂದರ್ಶಕರು ವಿಶ್ವವಿದ್ಯಾಲಯದ ಕಾರ್ಯನಿರ್ವಹಣೆಯ ಸುಧಾರಣೆಗಾಗಿ ಸಲಹೆಗಳನ್ನು ನೀಡಬಹುದು.

(2) ಸಂದರ್ಶಕರು, ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಸಂದರ್ಶಕರು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ವ್ಯವಹಾರಗಳಿಗೆ ಸಂಬಂಧಿಸಿದಂತೆ, ಯಾವುದೇ ಪತ್ರ ಅಥವಾ ಮಾಹಿತಿಯನ್ನು ತರಿಸಿಕೊಳ್ಳುವುದು.

(ii) ಸಂದರ್ಶಕರು, ಅವರು ಸ್ವೀಕರಿಸಿದ ಮಾಹಿತಿಯ ಆಧಾರದ ಮೇಲೆ ವಿಶ್ವವಿದ್ಯಾಲಯಗಳ ಯಾವುದೇ ಪ್ರಾಧಿಕಾರವು ಮಾಡಿದ ಯಾವುದೇ ಆದೇಶ, ನಡೆಸಿದ ವ್ಯವಹರಣೆಗಳು ಅಥವಾ ಕೈಗೊಂಡ ತೀರ್ಮಾನಗಳು, ಈ ಅಧಿನಿಯಮ, ವಿನಿಯಮಗಳು ಅಥವಾ ನಿಯಮಗಳಿಗೆ ಪೂರಕವಾಗಿಲ್ಲವೆಂದು ಮನಗಂಡರೆ ಅವರು ವಿಶ್ವವಿದ್ಯಾಲಯದ ಹಿತಾಸಕ್ತಿಯಿಂದ ತಾವು ಸೂಕ್ತವೆಂದು ಭಾವಿಸಬಹುದಾದಂಥ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಹಾಗೆ ಹೊರಡಿಸಿದ ನಿರ್ದೇಶನಗಳನ್ನು ಸಂಬಂಧಪಟ್ಟವರೆಲ್ಲರೂ ಪಾಲಿಸತಕ್ಕದ್ದು.

**14. ಸಹ-ಸಂದರ್ಶಕರು.–** (1) ಕರ್ನಾಟಕ ಸರ್ಕಾರದ ಮಾನ್ಯ ಉನ್ನತ ಶಿಕ್ಷಣ ಸಚಿವರು ವಿಶ್ವವಿದ್ಯಾಲಯದ ಸಹ-ಸಂದರ್ಶಕರಾಗಿರತಕ್ಕದ್ದು.

(2) ಸಂದರ್ಶಕರ ಅನುಪಸ್ಥಿತಿಯಲ್ಲಿ ಸಹ-ಸಂದರ್ಶಕರು ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**15. ಕುಲಾಧಿಪತಿಗಳು.–** (1) ಕುಲಾಧಿಪತಿಯವರನ್ನು ಪ್ರಾಯೋಜಕ ಸಂಸ್ಥೆಯು ನೇಮಿಸತಕ್ಕದ್ದು.

(2) ಪ್ರಾಯೋಜಕ ಸಂಸ್ಥೆಯ ಪ್ರಸ್ತುತ ಅಧ್ಯಕ್ಷರು ಮೊದಲನೇ ಕುಲಾಧಿಪತಿಗಳಾಗಿರತಕ್ಕದ್ದು, ಅವರು ತಮ್ಮ ಜೀವನಪರ್ಯಂತ ಅಥವಾ ಅವರು ತಮ್ಮ ಪದವನ್ನು ಬಿಟ್ಟುಕೊಡುವವರೆಗೆ ಕುಲಾಧಿಪತಿಗಳಾಗಿ ಪದಧಾರಣ ಮಾಡಿರತಕ್ಕದ್ದು.

(3) ತದನಂತರದ ಕುಲಾಧಿಪತಿಗಳು, ಅಂಥ ನೇಮಕಾತಿಯನ್ನು ಪರಿಗಣಿಸುವ ಸಂದರ್ಭದಲ್ಲಿ ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ, ಪ್ರಾಯೋಜಕ ಸಂಸ್ಥೆಯ ನ್ಯಾಸಧಾರಿಯಾಗಿರತಕ್ಕದ್ದು ಅಥವಾ ಶಿಕ್ಷಣ, ವಿಜ್ಞಾನ, ಸಂಸ್ಕೃತಿ ಅಥವಾ ಸಾರ್ವಜನಿಕ ಜೀವನ ಕ್ಷೇತ್ರಗಳಲ್ಲಿ ರಾಷ್ಟ್ರೀಯ ಮಟ್ಟದ ಛಾಪನ್ನು ಪಡೆದಿರುವ ಅಂಥ ಇತರ ವ್ಯಕ್ತಿಯಾಗಿರತಕ್ಕದ್ದು.

(4) ಹಾಗೆ ನೇಮಕಗೊಂಡ ತದನಂತರದ ಕುಲಾಧಿಪತಿಗಳು ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ಪದಧಾರಣ ಮಾಡತಕ್ಕದ್ದು.

(5) ಕುಲಾಧಿಪತಿಗಳು ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳ ಅಡಿಯಲ್ಲಿ ಅವರಿಗೆ ಪ್ರದಾನ ಮಾಡಬಹುದಾದಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು, ಅವುಗಳಲ್ಲಿ ಈ ಮುಂದಿನ ಅಧಿಕಾರಗಳು ಒಳಗೊಂಡಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುವುದು;

(ii) ಸಂದರ್ಶಕರ ಮತ್ತು ಸಹ-ಸಂದರ್ಶಕರಿಬ್ಬರ ಗೈರುಹಾಜರಿಯಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಘಟಿಕೋತ್ಸವಗಳಲ್ಲಿ ಅಧ್ಯಕ್ಷತೆಯನ್ನು ವಹಿಸುವುದು;

(iii) ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವುದು;

(iv) ಈ ಅಧಿನಿಯಮ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಅನುಸಾರವಾಗಿ ಕುಲಪತಿಗಳನ್ನು ನೇಮಿಸುವುದು ಅಥವಾ ಪುನರ್ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(v) ಈ ಅಧಿನಿಯಮದ 16ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ನಾಮನಿರ್ದೇಶಕ ಸಮಿತಿಯ ಸದಸ್ಯರಾಗಿ ಒಬ್ಬ ವ್ಯಕ್ತಿಯನ್ನು ನಾಮನಿರ್ದೇಶನ ಮಾಡುವುದು;

(vi) ಸಹಕುಲಪತಿಗಳು, ಡೀನ್, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿಗಳ ನೇಮಕಾತಿಯನ್ನು ಪೂರ್ವಾನುಮೋದಿಸುವುದು;

(vii) ಪ್ರಬಂಧಕ ಮಂಡಳಿಯ ಸದಸ್ಯರನ್ನಾಗಿ ಇಬ್ಬರು ಶಿಕ್ಷಣ ತಜ್ಞರನ್ನು ನಾಮನಿರ್ದೇಶಿಸುವುದು;

(viii) ಮೊದಲ ಸಹಕುಲಪತಿಗಳು ಮತ್ತು ಹಣಕಾಸು ಅಧಿಕಾರಿಗಳನ್ನು ನೇಮಿಸುವುದು;

(ix) ಮೊದಲ ವ್ಯವಸ್ಥಾಪನಾ ಮಂಡಳಿ, ಹಣಕಾಸು ಸಮಿತಿ, ಸಂಶೋಧನಾ ಪರಿಷತ್ತು ಹಾಗೂ ಶೈಕ್ಷಣಿಕ ಪರಿಷತ್ತುಗಳನ್ನು ರಚಿಸುವುದು;

(x) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ ಕಾರ್ಯಸೂಚಿ ವಿಷಯಗಳನ್ನು ಪೂರ್ವಾನುಮೋದಿಸುವುದು;

(xi) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ (ಪ್ರಬಂಧಕ ಮಂಡಳಿಯ ಸಭೆಯಲ್ಲಿ ಉಂಟಾದ ವಿವಾದಗಳನ್ನು ಹೊರತುಪಡಿಸಿ) ವಿವಾದಗಳನ್ನು ಪರಿಹರಿಸುವುದು.

(6) ಪದಾಧಿಕಾರಿ ಅಥವಾ ಸಂಸ್ಥೆ ಮತ್ತು ವಿಶ್ವವಿದ್ಯಾಲಯದ ಯಾವುದೇ ಇತರ ಪದಾಧಿಕಾರಿ ಅಥವಾ ಸಂಸ್ಥೆಯ ನಡುವೆ ವಿವಾದಗಳು ಉಂಟಾದಲ್ಲಿ, ಆ ವಿವಾದವನ್ನು ಕುಲಾಧಿಪತಿಯವರ ಪರ್ಯಾಲೋಚನೆಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿವಾದದ ಸಂದರ್ಭದಲ್ಲಿ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**16. ಕುಲಪತಿಗಳು.–** (1) (2)ನೇ ಉಪಪ್ರಕರಣದ ಉಪಬಂಧಗಳಿಗೆ ಅನುಸಾರವಾಗಿ ನಾಮನಿರ್ದೇಶಕ ಸಮಿತಿಯು ಶಿಫಾರಸ್ಸು ಮಾಡಿದ ಮೂರು ವ್ಯಕ್ತಿಗಳ ಪೈಕಿಯಿಂದ ಒಬ್ಬರನ್ನು ಮೂರು ವರ್ಷಗಳ ಅವಧಿಗಾಗಿ ಕುಲಪತಿಗಳನ್ನಾಗಿ, ಪರಿನಿಯಮಗಳಲ್ಲಿ ನಿಯಮಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರು ನೇಮಿಸತಕ್ಕದ್ದು. ಮೂರು ವರ್ಷಗಳ ಅವಧಿಯು ಮುಗಿದ ತರುವಾಯ, ಇದನ್ನು ಮೂರು ವರ್ಷಗಳ ಮತ್ತೊಂದು ಅವಧಿಗೆ ನವೀಕರಿಸಬಹುದು:

ಪರಂತು, ಕುಲಪತಿಯವರು, ತಮ್ಮ ಅವಧಿ ಮುಗಿದ ನಂತರವೂ ಹೊಸ ಕುಲಪತಿಯವರು ಸೇರಿಕೊಳ್ಳುವವರೆಗೆ ಪದದಲ್ಲಿ ಮುಂದುವರೆಯತಕ್ಕದ್ದು. ಆದಾಗ್ಯೂ ಈ ಅವಧಿಯು ಯಾವುದೇ ಸಂದರ್ಭದಲ್ಲಿ ಒಂದು ವರ್ಷವನ್ನು ಮೀರತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಹೇಳಿರುವ ನಾಮನಿರ್ದೇಶಕ ಸಮಿತಿಯಲ್ಲಿ ಈ ಮುಂದಿನ ವ್ಯಕ್ತಿಗಳು ಇರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು ನಾಮನಿರ್ದೇಶಿಸಿದ ಒಬ್ಬ ವ್ಯಕ್ತಿ;

(ii) ಪ್ರಬಂಧಕ ಮಂಡಳಿಯ ಇಬ್ಬರು ನಾಮ ನಿರ್ದೇಶಿತರು, ಇವರಲ್ಲಿ ಒಬ್ಬರನ್ನು ಪ್ರಬಂಧಕ ಮಂಡಳಿಯು ಸಮಿತಿಯ ಸಂಚಾಲಕರೆಂದು ನಾಮನಿರ್ದೇಶಿಸತಕ್ಕದ್ದು.

(3) ನಾಮನಿರ್ದೇಶನ ಸಮಿತಿಯು, ಅರ್ಹತೆಯ ಆಧಾರದ ಮೇಲೆ ಕುಲಪತಿಯ ಹುದ್ದೆಗೆ ಸೂಕ್ತವಾದ ಮೂರು ವ್ಯಕ್ತಿಗಳ ಹೆಸರನ್ನು ಶಿಫಾರಸ್ಸು ಮಾಡತಕ್ಕದ್ದು ಮತ್ತು ಅದನ್ನು ಪ್ರತಿಯೊಬ್ಬ ವ್ಯಕ್ತಿಯ ವಿದ್ಯಾರ್ಹತೆ ಮತ್ತಿತರ ವಿಶಿಷ್ಟ ಪ್ರಶಸ್ತಿಗಳನ್ನು ತಿಳಿಸುವ ಒಂದು ಸಂಕ್ಷಿಪ್ತ ವರದಿಯೊಂದಿಗೆ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು.

(4) ಕುಲಪತಿಯವರು ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಾಹಕ ಮತ್ತು ಶೈಕ್ಷಣಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣವನ್ನು ಚಲಾಯಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯದ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೊಳಿಸತಕ್ಕದ್ದು:

ಪರಂತು, ಶಿಕ್ಷಕರ ನೇಮಕಾತಿಯನ್ನು ಹೊರತುಪಡಿಸಿ ಕೂಡಲೇ ಕ್ರಮವನ್ನು ಕೈಗೊಳ್ಳಬೇಕಾದ ತುರ್ತು ಸ್ವರೂಪದ ಯಾವುದೇ ಇತರ ವಿಷಯಗಳಲ್ಲಿ ಮತ್ತು ಅದನ್ನು ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ವಿಶ್ವವಿದ್ಯಾಲಯವು ಇದಕ್ಕಾಗಿ ಅಧಿಕೃತಗೊಳಿಸಿದ್ದ ಯಾವೊಬ್ಬ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ಇತರ ಸಂಸ್ಥೆಯು ಕೂಡಲೇ ಕ್ರಮಕೈಗೊಳ್ಳುವುದು ಸಾಧ್ಯವಿರದಿರುವಾಗ ಕುಲಪತಿಯವರು ತಾನು ಸೂಕ್ತವೆಂದು ಭಾವಿಸಬಹುದಾದಂತಹ ಕ್ರಮವನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆದು ಕೈಗೊಳ್ಳತಕ್ಕದ್ದು.

(5) ಕುಲಪತಿಯವರು ಪರಿನಿಯಮಗಳು ಅಥವಾ ನಿಯಮಗಳಲ್ಲಿ ಹೇಳಲಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು:

ಪರಂತು, ಕುಲಪತಿಗಳ ಅಭಿಪ್ರಾಯದಲ್ಲಿ, ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಯಾವುದೇ ನಿರ್ಣಯವು, ಈ ಅಧಿನಿಯಮ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳು, ವಿನಿಯಮಗಳು ಅಥವಾ ನಿಯಮಗಳ ಮೂಲಕ ಪ್ರದತ್ತವಾದ ಅಧಿಕಾರದ ಹೊರಗಿದೆ ಅಥವಾ ವಿಶ್ವವಿದ್ಯಾಲಯದ ಹಿತಾಸಕ್ತಿಗೆ ಪ್ರತಿಕೂಲವಾಗಬಹುದಾಗಿದ್ದರೆ, ಅವರು

ನಿರ್ಣಯದ ದಿನಾಂಕದಿಂದ ಹದಿನೈದು ದಿನಗಳ ಒಳಗೆ ತನ್ನ ನಿರ್ಣಯವನ್ನು ಪರಿಷ್ಕರಿಸಲು ಸಂಬಂಧಪಟ್ಟ ಪ್ರಾಧಿಕಾರವನ್ನು ಆತನು ಕೋರತಕ್ಕದ್ದು ಮತ್ತು ಪ್ರಾಧಿಕಾರವು ಅಂಥ ನಿರ್ಣಯವನ್ನು ಸಂಪೂರ್ಣವಾಗಿ ಅಥವಾ ಭಾಗಶ:ವಾಗಿ ಪರಿಷ್ಕರಿಸಲು ನಿರಾಕರಿಸಿದ ಸಂದರ್ಭದಲ್ಲಿ ಅಥವಾ ಹದಿನೈದು ದಿನಗಳೊಳಗೆ ಯಾವುದೇ ನಿರ್ಣಯವನ್ನು ಕೆಗೆದುಕೊಳ್ಳಲು ವಿಫಲವಾದಲ್ಲಿ, ನಂತರ ಅಂಥ ವಿಷಯವನ್ನು ಕುಲಾಧಿಪತಿಗಳಿಗೆ ಕಳುಹಿಸತಕ್ಕದ್ದು ಮತ್ತು ಈ ಬಗ್ಗೆ ಇವರ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

(6) ಕುಲಪತಿಯವರ ಸೇವೆಗಳನ್ನು, ಪ್ರಬಂಧಕ ಮಂಡಳಿಯ ಅನುಮೋದನೆಯೊಂದಿಗೆ ಮತ್ತು ಸಹಜ ನ್ಯಾಯದ ತತ್ವಗಳನ್ನು ಅನುಸರಿಸಿದ ನಂತರ ಹಾಗೂ ಶಿಸ್ತಿನ ಆಧಾರದ ಮೇಲೆ ಅಂತ್ಯಗೊಳಿಸುವ ಸಂದರ್ಭವೂ ಸೇರಿದಂತೆ, ಪ್ರಕರಣದ ಬಗ್ಗೆ ಕುಲಪತಿಯು ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡಿದ ತರುವಾಯ, ಕುಲಾಧಿಪತಿಯವರು ಅಂತ್ಯಗೊಳಿಸಬಹುದು.

(7) ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಸಂದರ್ಶಕರು, ಸಹ-ಸಂದರ್ಶಕರು ಮತ್ತು ಕುಲಾಧಿಪತಿಯವರು ಇವರುಗಳ ಗೈರು ಹಾಜರಿಯ ಸಂದರ್ಭದಲ್ಲಿ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**17. ಸಹಕುಲಪತಿಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಮೂರು ಜನರನ್ನು ಮೀರದಂತೆ ಸಹಕುಲಪತಿಗಳನ್ನು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**18. ವ್ಯಾಸಂಗ ವಿಭಾಗಗಳ ಡೀನ್‌ಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಪರಿನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವ್ಯಾಸಂಗ ವಿಭಾಗಗಳ ಡೀನ್‌ಗಳನ್ನು ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**19. ಕುಲಸಚಿವರು.–** (1) ಕುಲಾಧಿಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಸಚಿವರನ್ನು ನೇಮಕ ಮಾಡತಕ್ಕದ್ದು.

(2) ಪರಿನಿಯಮಗಳಲ್ಲಿ ಪರಿಭಾಷಿಸಿರುವಂಥ ಎಲ್ಲಾ ಕರಾರುಗಳನ್ನು ವಿಶ್ವವಿದ್ಯಾಲಯದ ಪರವಾಗಿ ಕುಲಸಚಿವರು ಮಾಡಿಕೊಳ್ಳತಕ್ಕದ್ದು ಮತ್ತು ಅದಕ್ಕೆ ಸಹಿ ಹಾಕತಕ್ಕದ್ದು.

(3) ಕುಲಸಚಿವರು ವಿಶ್ವವಿದ್ಯಾಲಯದ ಪರವಾಗಿ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಪರಿನಿಯಮಗಳಿಂದ ಪ್ರದತ್ತಗೊಳಿಸಬಹುದಾದಂಥ ಅಥವಾ ಕುಲಾಧಿಪತಿಯವರು ಮತ್ತು ಕುಲಪತಿಯವರು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು ವಿಶ್ವವಿದ್ಯಾಲಯದ ದಾಖಲೆಗಳು ಮತ್ತು ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು, ಕುಲಪತಿಯವರು ಅಥವಾ ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಅಂಥ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿತಕ್ಕದ್ದು.

**20. ಹಣಕಾಸು ಅಧಿಕಾರಿ.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು, ಪರಿನಿಯಮಗಳ ಮೂಲಕ ಪ್ರದತ್ತಗೊಳಿಸಬಹುದಾದ ಅಂಥ ವಿಧಾನದಲ್ಲಿ ಹಣಕಾಸು ಅಧಿಕಾರಿಯನ್ನು ನೇಮಕ ಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**21. ಇತರ ಅಧಿಕಾರಿಗಳು.–** ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ ನೇಮಕಾತಿಯ ವಿಧಾನ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಕರ್ತವ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ – IV

## ವಿಶ್ವವಿದ್ಯಾಲಯದ ಪ್ರಾಧಿಕಾರಗಳು

**22. ವಿಶ್ವವಿದ್ಯಾಲಯದ ಪ್ರಾಧಿಕಾರಗಳು.–** ಈ ಮುಂದಿನವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:-

ಮುಂದಿನ ಪುಟ

(ii) ವ್ಯವಸ್ಥಾಪನಾ ಮಂಡಳಿ;

(iii) ಶೈಕ್ಷಣಿಕ ಪರಿಷತ್ತು;

(iv) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು;

(v) ಹಣಕಾಸು ಸಮಿತಿ; ಮತ್ತು

(vi) ವಿಶ್ವವಿದ್ಯಾಲಯದ ಪ್ರಾಧಿಕಾರಗಳೆಂದು ಪರಿನಿಯಮಗಳ ಮೂಲಕ ಘೋಷಿಸಬಹುದಾದ ಅಂಥ ಇತರ ಪ್ರಾಧಿಕಾರಗಳು.

**23. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು.–** (1) ಪ್ರಬಂಧಕ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು – ಅಧ್ಯಕ್ಷರು;

(ii) ಕುಲಪತಿಯವರು – ಸದಸ್ಯರು;

(iii) ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(iv) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(v) ರಾಜ್ಯ ಸರ್ಕಾರವು ನಾಮ ನಿರ್ದೇಶನ ಮಾಡಿದ ಆಡಳಿತವನ್ನು ಒಳಗೊಂಡಂತೆ ವ್ಯವಸ್ಥಾಪನೆ, ಹಣಕಾಸು ಅಥವಾ ಯಾವುದೇ ಇತರ ವಿಶೇಷ ಕ್ಷೇತ್ರದಲ್ಲಿನ ಒಬ್ಬರು ತಜ್ಞರು;

(vi) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಮೂವರು ವ್ಯಕ್ತಿಗಳು ಅವರ ಪೈಕಿ ಒಬ್ಬರು ಮಹಿಳೆಯಾಗಿರತಕ್ಕದ್ದು;

(vii) ಸಹ ಕುಲಪತಿಯವರು ಮತದಾನದ ಹಕ್ಕಿಲ್ಲದ ಸದಸ್ಯರಾಗಿರತಕ್ಕದ್ದು;

(viii) ವಿಶ್ವವಿದ್ಯಾಲಯ ಅನುದಾನ ಆಯೋಗದ ನಾಮನಿರ್ದೇಶಿತ ಒಬ್ಬ ಸುಪ್ರಸಿದ್ಧ ಶಿಕ್ಷಣ ತಜ್ಞರು.

(2) ಕುಲಸಚಿವರು ಪ್ರಬಂಧಕ ಮಂಡಳಿಯ ಮತ ದಾನದ ಹಕ್ಕಿರದ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ಪ್ರಬಂಧಕ ಮಂಡಳಿಯ ಸದಸ್ಯರ ಪದಾವಧಿ, ಸರ್ಕಾರದಿಂದ ನಾಮನಿರ್ದೇಶಿತರಾದ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ನೇಮಕಾತಿ, ನವೀಕರಣ ಮತ್ತು ತೆಗೆದುಹಾಕುವುದು ಮುಂತಾದವುಗಳು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಾಧಿಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರ ಗೈರುಹಾಜರಿಯಲ್ಲಿ ಕುಲಾಧಿಪತಿಯವರಿಂದ ನಾಮನಿರ್ದೇಶಿತರಾದ ಯಾರಾದರೂ ಒಬ್ಬರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು. ಅಂಥ ಸಭೆಯ ಅಧ್ಯಕ್ಷತೆಯನ್ನು ವಹಿಸುವುದಕ್ಕೆ ಕುಲಾಧಿಪತಿಯವರು ಯಾವೊಬ್ಬ ವ್ಯಕ್ತಿಯನ್ನೂ ನಾಮನಿರ್ದೇಶನ ಮಾಡಿರದಿದ್ದಲ್ಲಿ, ಸಭೆಯಲ್ಲಿ ಹಾಜರಿರುವ ಸದಸ್ಯರು ಸರಳ ಬಹುಮತದ ಮೂಲಕ ಅವರುಗಳ ಪೈಕಿಯಿಂದಲೇ ಆ ಸಭೆಗೆ ಮಾತ್ರವೇ ಅಧ್ಯಕ್ಷನನ್ನು ಚುನಾಯಿಸತಕ್ಕದ್ದು.

(5) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಿಗೆ, ಅಂಥ ಸಭೆಯಲ್ಲಿ ಹಾಜರಾಗುವ ಮತ್ತು ಮತದಾನ ನೀಡುವ ಮೂರು ಜನ ಸದಸ್ಯರು ಗಣಪೂರ್ತಿ (ಕೋರಂ) ಆಗಿರತಕ್ಕದ್ದು:

ಪರಂತು, ಪ್ರಬಂಧಕ ಮಂಡಳಿಯ ಯಾವುದೇ ಸಭೆಯ ಕೋರಂ ಪೂರ್ಣವಾಗಬೇಕಾದರೆ ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಿರುವುದು ಮತ್ತು ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ನಾಮನಿರ್ದೇಶಿತರು ಹಾಜರಾಗದೇ ಇದ್ದಾಗ ಕುಲಪತಿಯವರು ಹಾಜರಿರುವುದು ಯಾವಾಗಲೂ ಅವಶ್ಯವಾಗಿರತಕ್ಕದ್ದು.

(6) ಪ್ರಬಂಧಕ ಮಂಡಳಿಯು ವಿಶ್ವವಿದ್ಯಾಲಯದ ಪ್ರಧಾನ ಪ್ರಬಂಧಕ ಸಂಸ್ಥೆಯಾಗಿರತಕ್ಕದ್ದು ಮತ್ತು ಅದು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಕಗೊಳಿಸುವುದು;

(ii) ವಿಶ್ವವಿದ್ಯಾಲಯವು ಅನುಸರಿಸಬೇಕಾದ ಕಾರ್ಯನೀತಿಗಳನ್ನು ರಚಿಸುವುದು;

(iii) ಈ ಅಧಿನಿಯಮದ ಅಥವಾ ಪರಿನಿಯಮಗಳ ಅಥವಾ ನಿಯಮಗಳ ಉಪಬಂಧಗಳಿಗೆ ಅನುಗುಣವಾಗಿ ಇರದ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ತೀರ್ಮಾನಗಳನ್ನು ಪುನರೀಕ್ಷಿಸುವುದು

(iv) ವಿಶ್ವವಿದ್ಯಾಲಯದ ಆಯವ್ಯಯ ಮತ್ತು ವಾರ್ಷಿಕ ವರದಿಗಳನ್ನು ಅನುಮೋದಿಸುವುದು;

(v) ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸುವುದು ಅಥವಾ ಈಗಾಗಲೇ ಇರುವ ಪರಿನಿಯಮಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವುದು ಅಥವಾ ನಿರಸನಗೊಳಿಸುವುದು;

(vi) ವಿಶ್ವವಿದ್ಯಾಲಯವನ್ನು ಸ್ವಯಂಸಮಾಪನಗೊಳಿಸುವ ನಿರ್ಧಾರವನ್ನು ತೆಗೆದುಕೊಳ್ಳುವುದು;

(vii) ಸರ್ಕಾರಕ್ಕೆ ಸಲ್ಲಿಸುವ ಪ್ರಸ್ತಾವಗಳನ್ನು ಅನುಮೋದಿಸುವುದು;

(viii) ಶುಲ್ಕ ನಿಯಂತ್ರಣ ಸಮಿತಿಗೆ ಮೂವರು ಸದಸ್ಯರನ್ನು ನಾಮನಿರ್ದೇಶನ ಮಾಡುವುದು;

(ix) ವಿಶ್ವವಿದ್ಯಾಲಯದ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕೆ ಅಪೇಕ್ಷಣೀಯವೆಂದು ಕಂಡುಬರುವಂಥ ತೀರ್ಮಾನಗಳನ್ನು ಮತ್ತು ಕ್ರಮಗಳನ್ನು ಕೈಗೊಳ್ಳುವುದು.

(7) ಪ್ರಬಂಧಕ ಮಂಡಳಿಯು ಒಂದು ವರ್ಷದಲ್ಲಿ ಕನಿಷ್ಠ ಮೂರು ಸಲ ಸಭೆ ಸೇರತಕ್ಕದ್ದು.

(8) ಪ್ರಬಂಧಕ ಮಂಡಳಿಯು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಸಮಯ ಮತ್ತು ಸ್ಥಳದಲ್ಲಿ ಸಭೆ ಸೇರತಕ್ಕದ್ದು.

**24. ವ್ಯವಸ್ಥಾಪನಾ ಮಂಡಳಿ.**– (1) ವ್ಯವಸ್ಥಾಪನಾ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಗಳು;

(ii) ಸಹಕುಲಪತಿಗಳು;

(iii) ಕುಲಸಚಿವರು;

(iv) ಪ್ರಾಯೋಜಕ ಸಂಸ್ಥೆಯ ಇಬ್ಬರು ನಾಮನಿರ್ದೇಶಿತರು;

(v) ಕುಲಪತಿಗಳು ನಾಮನಿರ್ದೇಶಿಸಬಹುದಾದ ವಿದ್ಯಾಲಯಗಳ ಇಬ್ಬರು ಡೀನ್‌ಗಳು;

(2) ಕುಲಪತಿಯವರು ವ್ಯವಸ್ಥಾಪನಾ ಮಂಡಳಿಯ ಅಧ್ಯಕ್ಷರಾಗಿರತಕ್ಕದ್ದು ಮತ್ತು ಕುಲಸಚಿವರು ವ್ಯವಸ್ಥಾಪನಾ ಮಂಡಳಿಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ವ್ಯವಸ್ಥಾಪನಾ ಮಂಡಳಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ವ್ಯವಸ್ಥಾಪನಾ ಮಂಡಳಿಯ ಎಲ್ಲಾ ಸಭೆಗಳಲ್ಲಿ ಯಾವಾಗಲೂ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು. ಹಾಗೂ ಕುಲಪತಿಯವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೇ ಇದ್ದ ಸಂದರ್ಭದಲ್ಲಿ ಸಭೆಯಲ್ಲಿ ಹಾಜರಿರುವ ಸದಸ್ಯರು ಚುನಾಯಿಸಿದ ಯಾವುದೇ ಇತರ ಸದಸ್ಯರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ವ್ಯವಸ್ಥಾಪನಾ ಮಂಡಳಿಯ ಸಭೆಯಲ್ಲಿ ಯಾವುದೇ ವಿಷಯವನ್ನು ಕುರಿತು ವಿವಾದ ಉಂಟಾದಲ್ಲಿ ಸದರಿ ವಿಷಯವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯದ ಬಗ್ಗೆ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**25. ಶೈಕ್ಷಣಿಕ ಪರಿಷತ್ತು.**–(1) ಶೈಕ್ಷಣಿಕ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i)ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಕಾರ್ಯದರ್ಶಿಗಳು

(iv) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಶೈಕ್ಷಣಿಕ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಶೈಕ್ಷಣಿಕ ಸಂಸ್ಥೆಯಾಗಿರತಕ್ಕದ್ದು ಮತ್ತು ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಹಾಗೂ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**26. ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು.**– (1) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಸಂಶೋಧನಾ ಮತ್ತು ಅನ್ವೇಷಣಾ ಸಮಿತಿಯಾಗಿರತಕ್ಕದ್ದು ಹಾಗೂ ಸಂಶೋಧನಾ ಕ್ಷೇತ್ರಗಳ ಆದ್ಯತೆಯೂ ಒಳಗೊಂಡಂತೆ, ವಿಶ್ವವಿದ್ಯಾಲಯವು ಕೈಗೊಳಬೇಕಾದ ಸಂಶೋದನೆಯ ಬಗ್ಗೆ ಒಂದು ವ್ಯಾಪಕವಾದ

...ಪೂರ್ಣ ಭವಿಷ್ಯದ್ ದೃಷ್ಟಿಯನ್ನು ಒದಗಿಸತಕ್ಕದ್ದು. ಈ ಪರಿಷತ್ತು, ಈ ಅಧಿನಿಯಮದ, ಪರಿನಿಯಮಗಳ, ...ಯಮಗಳ ಮತ್ತು ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಸಂಶೋಧನೆ ಮತ್ತು ಅನ್ವೇಷಣಾ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಸಂಶೋಧನೆಯ ಡೀನ್ – ಕಾರ್ಯದರ್ಶಿ

(iv) ಅನ್ವೇಷಣಾ ವಿಭಾಗದ ಮುಖ್ಯಸ್ಥರು – ಸದಸ್ಯರು

(V) ಎಲ್ಲಾ ವ್ಯಾಸಂಗ ವಿಭಾಗಗಳ ಡೀನ್‌ಗಳು – ಸದಸ್ಯರು ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

**27. ಹಣಕಾಸು ಸಮಿತಿ.**– (1) ಹಣಕಾಸು ಸಮಿತಿ ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಾಧಿಪತಿಯವರು ಅಥವಾ ಅವರ ನಾಮನಿರ್ದೇಶಿತರು – ಅಧ್ಯಕ್ಷರು

(ii) ಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಸದಸ್ಯರು

(iv) ಹಣಕಾಸು ಅಧಿಕಾರಿ – ಕಾರ್ಯದರ್ಶಿ

(V) ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು – ಸದಸ್ಯರು; ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಹಣಕಾಸು ಸಮಿತಿಯು ಹಣಕಾಸಿನ ವಿಷಯಗಳನ್ನು ಕೈಗೊಳ್ಳುವ ವಿಶ್ವವಿದ್ಯಾಲಯದ ಪ್ರಧಾನ ಹಣಕಾಸು ಸಂಸ್ಥೆಯಾಗಿರತಕ್ಕದ್ದು ಹಾಗೂ ಅದು ಈ ಅಧಿನಿಯಮ, ನಿಯಮಗಳು ಮತ್ತು ಪರಿನಿಯಮಗಳ ಉಪಬಂಧಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಹಣಕಾಸು ವಿಷಯಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**28. ಇತರ ಪ್ರಾಧಿಕಾರಗಳು.**– ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ರಚನೆ, ಅಧಿಕಾರಗಳು ಹಾಗೂ ಪ್ರಕಾರ್ಯಗಳು ಪರಿನಿಯಮಗಳಿಂದ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

**29. ಒಂದು ಪ್ರಾಧಿಕಾರದ ಅಥವಾ ಸಂಸ್ಥೆಯ ಸದಸ್ಯತ್ವಕ್ಕೆ ಅನರ್ಹತೆ.**– ವಿಶ್ವವಿದ್ಯಾಲಯದ ಸಂಸ್ಥೆಗಳ ಯಾವುವೇ ಪ್ರಾಧಿಕಾರಗಳ ಒಬ್ಬ ವ್ಯಕ್ತಿಯು,-

(ಎ) ಅಸ್ವಸ್ಥ ಚಿತ್ತನಾಗಿದ್ದು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿಸಲ್ಪಟ್ಟಿದ್ದರೆ;

(ಬಿ) ಅವಿಮುಕ್ತ ದಿವಾಳಿಯಾಗಿದ್ದರೆ;

(ಸಿ) ನೈತಿಕ ಅಧಃಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದರೆ;

(ಡಿ) ಖಾಸಗಿ ಬೋಧನಾ ತರಗತಿಗಳನ್ನು ನಡೆಸುತ್ತಿದ್ದರೆ ಅಥವಾ ಸ್ವತಃ ನಿರತನಾಗಿದ್ದರೆ;

(ಇ) ಯಾವುದೇ ವಿಧದಲ್ಲಿ, ಎಲ್ಲಿಯೇ, ಯಾವುದೇ ಪರೀಕ್ಷೆಯನ್ನು ನಡೆಸುವಲ್ಲಿ ಅನುಚಿತ ಅಭ್ಯಾಸದಲ್ಲಿ ತೊಡಗಿದ್ದಕ್ಕಾಗಿ ಅಥವಾ ಉತ್ತೇಜಿಸಿದ್ದಕ್ಕಾಗಿ ದಂಡಿತನಾಗಿದ್ದರೆ;

(ಎಫ್) ಪ್ರಾಯೋಜಿತ ಸಂಸ್ಥೆಯು ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಯಾವೊಬ್ಬ ಸದಸ್ಯನನ್ನು ಆ ಪದವನ್ನು ಹೊಂದಿರುವುದಕ್ಕೆ ಅರ್ಹನಲ್ಲನೆಂದು ಲಿಖಿತದಲ್ಲಿ ಅಭಿಪ್ರಾಯ ನೀಡಿದಾಗಲೆಲ್ಲಾ,

–ಸದಸ್ಯನಾಗಿರುವುದಕ್ಕೆ ಅನರ್ಹನಾಗತಕ್ಕದ್ದು.

**30. ಖಾಲಿಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಕಾರ್ಯ ಅಥವಾ ವ್ಯವಹರಣೆಗಳು ಕೇವಲ ಅದರಲ್ಲಿ ಯಾವುದೇ ಖಾಲಿಸ್ಥಾನ ಇದೆ ಎಂಬ ಕಾರಣದಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣದಿಂದ ಮಾತ್ರವೇ ಅಸಿಂಧುವಾಗತಕ್ಕದ್ದಲ್ಲ.

**31. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು.–** (1) ಯಾವುವೇ ಕಾರ್ಯಸೂಚಿ ವಿಷಯಗಳನ್ನು ಕುಲಾಧಿಪತಿಯವರ ಪೂರ್ವಾನುಮೋದನೆಯನ್ನು ಪಡೆಯದೇ ಪ್ರಬಂಧಕ ಮಂಡಳಿಯ ಅಥವಾ ಕಾರ್ಯಕಾರಿ ಪರಿಷತ್ತು ಅಥವಾ ಯಾವುದೇ ಸಮಿತಿಯ ಸಭೆಗಳ ಕಾರ್ಯಸೂಚಿ ವಿಷಯಗಳಲ್ಲಿ ಸೇರಿಸತಕ್ಕದ್ದಲ್ಲ ಅಥವಾ ಚರ್ಚೆಗೆ ತೆಗೆದುಕೊಳ್ಳತಕ್ಕದ್ದಲ್ಲ ಮತ್ತು ತೀರ್ಮಾನಿಸತಕ್ಕದ್ದಲ್ಲ.

(2) ಈ ಅಧಿನಿಯಮದ ಯಾವುದೇ ಉಪಬಂಧಗಳನ್ನು ಪಾಲಿಸದೆ ಇರುವ ಸಂದರ್ಭದಲ್ಲಿ, ಕುಲಾಧಿಪತಿಯವರು ವಿಶ್ವವಿದ್ಯಾಲಯದ ಯಾವುದೇ ಪದಾಧಿಕಾರಿ ಅಥವಾ ಸಂಸ್ಥೆಯು ತೆಗೆದುಕೊಂಡ ಎಲ್ಲಾ ತೀರ್ಮಾನಗಳನ್ನು ವಿಪರ್ಯಯಗೊಳಿಸುವ ಮೂಲಕ ಪರಿಹಾರ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಅಧಿಕಾರವನ್ನು ಎಲ್ಲಾ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಅಂಥ ಪರಿಹಾರ ಕ್ರಮದ ಪರಿಣಾಮವಾಗಿ ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ವಿಶ್ವವಿದ್ಯಾಲಯದ ಪದಾಧಿಕಾರಿ ಅಥವಾ ಸಂಸ್ಥೆಯು ಕೈಗೊಂಡಿದ್ದ ಎಲ್ಲಾ ಅಂಥ ಕ್ರಮಗಳು, ಮೊದಲಿನಿಂದಲೂ ಶೂನ್ಯ ಮತ್ತು ಅಕೃತ ಎಂದು ಭಾವಿಸತಕ್ಕದ್ದು ಹಾಗೂ ತತ್ಪರಿಣಾಮವಾಗಿ, ಉಪಬಂಧ ಪಾಲಿಸದೇ ಇದ್ದ ವಿಷಯ ಅಥವಾ ನಿರ್ಧಾರದ ಸಂಬಂಧದಲ್ಲಿ ಅದಕ್ಕೆ ಮುಂಚೆ ಇದ್ದ ವಸ್ತುಸ್ಥಿತಿಯೇ ಮುಂದುವರಿಯತಕ್ಕದ್ದು.

## ಅಧ್ಯಾಯ – V
## ಪರಿನಿಯಮಗಳು ಮತ್ತು ವಿನಿಯಮಗಳು

**32. ಪರಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಪರಿನಿಯಮಗಳು ವಿಶ್ವವಿದ್ಯಾಲಯಕ್ಕೆ ಮತ್ತು ಸಿಬ್ಬಂದಿಗೆ ಸಂಬಂಧಿಸಿದ ಎಲ್ಲಾ ಅಥವಾ ಯಾವುದೇ ವಿಷಯಕ್ಕೆ ಈ ಕೆಳಗಿನಂತೆ ಉಪಬಂಧ ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಕಾರ್ಯಕಲಾಪಗಳನ್ನು ನಡೆಸುವ ಮತ್ತು ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸದಿರುವ ಸಂಸ್ಥೆಗಳ ರಚನೆಯ ಕಾರ್ಯವಿಧಾನ;

(ii) 51ನೇ ಪ್ರಕರಣಕ್ಕೆ ಒಳಪಟ್ಟು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ವಿಶ್ವವಿದ್ಯಾಲಯ ದತ್ತಿ ನಿಧಿ, ಸಾಮಾನ್ಯ ನಿಧಿ ಹಾಗೂ ಅಭಿವೃದ್ಧಿ ನಿಧಿಗಳ ನಿರ್ವಹಣೆ;

(iii) ಕುಲಪತಿಗಳು, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರ ನೇಮಕಾತಿಯ ನಿಬಂಧನೆಗಳು ಹಾಗೂ ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಪ್ರಕಾರ್ಯಗಳು;

(iv) ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ, ಅಧ್ಯಾಪಕರ ಮತ್ತು ನೌಕರರ ನೇಮಕಾತಿ ವಿಧಾನ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(v) ವಿಶ್ವವಿದ್ಯಾಲಯ ಹಾಗೂ ಅದರ ಅಧಿಕಾರಿಗಳು, ವ್ಯಾಸಂಗ ವಿಭಾಗದ (ಫ್ಯಾಕಲ್ಟಿ) ಸದಸ್ಯರು, ನೌಕರರು ಹಾಗೂ ವಿದ್ಯಾರ್ಥಿಗಳ ನಡುವೆ ಉಂಟಾದ ವಿವಾದಗಳನ್ನು ಪರಿಹರಿಸುವ ಕಾರ್ಯವಿಧಾನ;

(vi) ವಿಭಾಗಗಳು ಮತ್ತು ವ್ಯಾಸಂಗ ವಿಭಾಗಗಳ (ಫ್ಯಾಕಲ್ಟಿಗಳ) ಸೃಜನೆ, ರದ್ಧತಿ ಅಥವಾ ಪುನಾರಚನೆ;

(vii) ಇತರ ವಿಶ್ವವಿದ್ಯಾಲಯಗಳು ಅಥವಾ ಉನ್ನತ ಕಲಿಕಾ ಸಂಸ್ಥೆಗಳ ಜೊತೆಯಲ್ಲಿ ಸಹಕರಿಸಬೇಕಾದ ರೀತಿ;

(viii) ಗೌರವ ಪದವಿಗಳ ನೀಡಿಕೆಯ ಕಾರ್ಯವಿಧಾನ;

(ix) ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿವೇತನ ಮಂಜೂರಾತಿಗೆ ಸಂಬಂಧಿಸಿದ ಉಪಬಂಧಗಳು;

(x) ವಿವಿಧ ವ್ಯಾಸಂಗ ಕ್ರಮಗಳಲ್ಲಿನ ಸೀಟುಗಳ ಸಂಖ್ಯೆಗೆ ಸಂಬಂಧಿಸಿದ ಕಾರ್ಯನೀತಿಗಳು ಮತ್ತು ಅಂಥ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಕಾರ್ಯವಿಧಾನ;

(xi) ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಶುಲ್ಕಕ್ಕೆ ಸಂಬಂಧಿಸಿದ ಕಾರ್ಯನೀತಿ;

(xii) ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಉಚಿತ ಶಿಕ್ಷಣ, ಪದಕಗಳು ಹಾಗೂ ಬಹುಮಾನಗಳನ್ನು ಪ್ರಾರಂಭಿಸುವುದು;

(xiii) ಪ್ರಬಂಧಕ ಮಂಡಳಿಯು ನಿರ್ಧರಿಸಬಹುದಾದ ಅಥವಾ ಈ ಅಧಿನಿಯಮದ ಅಡಿಯಲ್ಲಿ ಪರಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬೇಕಾದ ಅಗತ್ಯತೆಯುಳ್ಳ ಯಾವುದೇ ಇತರ ವಿಷಯಗಳು.

**33. ಪರಿನಿಯಮಗಳ ರಚನೆ ವಿಧಾನ.–** (1) ವ್ಯವಸ್ಥಾಪನಾ ಮಂಡಳಿಯು ರಚಿಸಿದ ಮೊದಲ ಪರಿನಿಯಮಗಳನ್ನು ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ವ್ಯವಸ್ಥಾಪನಾ ಮಂಡಳಿಯು ಸಲ್ಲಿಸಿದ ಮೊದಲ ಪರಿನಿಯಮಗಳನ್ನು ಪ್ರಬಂಧಕ ಮಂಡಳಿಯು ಪರಿಗಣಿಸತಕ್ಕದ್ದು ಹಾಗೂ ತಾನು ಅವಶ್ಯವೆಂದು ಭಾವಿಸಬಹುದಾದ ಅಂಥ ಮಾರ್ಪಾಡುಗಳು, ಯಾವುದಾದರು ಇದ್ದಲ್ಲಿ, ಅವುಗಳೊಡನೆ ತನ್ನ ಅನುಮೋದನೆಯನ್ನು ನೀಡತಕ್ಕದ್ದು.

(3) ವಿಶ್ವವಿದ್ಯಾಲಯವು, ಪ್ರಬಂಧಕ ಮಂಡಳಿಯು ಅನುಮೋದಿಸಿದ ಮೊದಲ ಪರಿನಿಯಮಗಳನ್ನು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ಪ್ರಕಟಿಸತಕ್ಕದ್ದು ಮತ್ತು ತದನಂತರ ಮೊದಲ ಪರಿನಿಯಮಗಳ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**34. ಪರಿನಿಯಮಗಳ ತಿದ್ದುಪಡಿಯ ಅಧಿಕಾರ.–** ಪ್ರಬಂಧಕ ಮಂಡಳಿಯು ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸಬಹುದು ಅಥವಾ ಪರಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ಅವನ್ನು ನಿರಸನಗೊಳಿಸಬಹುದು.

**35. ವಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ವಿನಿಯಮಗಳು ಈ ಮುಂದಿನ ವಿಷಯಗಳಿಗೆ ಉಪಬಂಧಗಳನ್ನು ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ವಿದ್ಯಾರ್ಥಿ ಪಟ್ಟಿಯಲ್ಲಿ ಅವರುಗಳ ದಾಖಲಾತಿ ಹಾಗೂ ಮುಂದುವರಿಕೆ;

(ii) ವಿಶ್ವವಿದ್ಯಾಲಯದ ಎಲ್ಲಾ ಪದವಿಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ನಿಗದಿಪಡಿಸತಕ್ಕ ವ್ಯಾಸಂಗ ಕ್ರಮಗಳು;

(iii) ಪದವಿಗಳ ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರದಾನ;

(iv) ಸಂಶೋಧನಾ ವೇತನಗಳು (ಫೆಲೋಶಿಪ್), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಪದಕಗಳು ಮತ್ತು ಬಹುಮಾನಗಳನ್ನು ನೀಡಲು ಷರತ್ತುಗಳು;

(v) ಪರೀಕ್ಷೆಗಳನ್ನು ನಡೆಸುವುದು ಹಾಗೂ ಪರೀಕ್ಷೆ ನಡೆಸುವ ಸಂಸ್ಥೆಗಳು, ಪರೀಕ್ಷಕರು, ಪರೀಕ್ಷಾ ಮೇಲ್ವಿಚಾರಕರು, ಟ್ಯಾಬುಲೇಟರ್‌ಗಳು ಮತ್ತು ಮಾಡರೇಟರ್‌ಗಳ ನೇಮಕಾತಿ ಷರತ್ತುಗಳು ಮತ್ತು ವಿಧಾನ ಹಾಗೂ ಅವರ ಕರ್ತವ್ಯಗಳು;

(vi) ವಿಶ್ವವಿದ್ಯಾಲಯದ ಪರೀಕ್ಷೆಗಳಿಗೆ, ಪದವಿಗಳಿಗೆ ಹಾಗೂ ಇತರ ಶೈಕ್ಷಣಿಕ ಪ್ರಶಸ್ತಿಗಳಿಗೆ ಪ್ರವೇಶಕ್ಕೆ ವಿಧಿಸತಕ್ಕ ಶುಲ್ಕ;

(vii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನಲ್ಲಿ ವಿದ್ಯಾರ್ಥಿಗಳ ನಿವಾಸಕ್ಕಾಗಿ ಷರತ್ತುಗಳು;

(viii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಶಿಸ್ತು ಪಾಲನೆ;

(ix) ಈ ಅಧಿನಿಯಮದ ಅಡಿಯಲ್ಲಿನ ಪರಿನಿಯಮಗಳಲ್ಲಿ ಉಪಬಂಧ ಕಲ್ಪಿಸಬಹುದಾಂಥ ಇತರ ಎಲ್ಲಾ ವಿಷಯಗಳು.

**36. ವಿನಿಯಮಗಳ ರಚನೆ ವಿಧಾನ.–** ವಿನಿಯಮಗಳನ್ನು ಶೈಕ್ಷಣಿಕ ಪರಿಷತ್ತು ರಚಿಸತಕ್ಕದ್ದು ಹಾಗೂ ವ್ಯವಸ್ಥಾಪನಾ ಮಂಡಳಿಯು ಅನುಮೋದಿಸತಕ್ಕದ್ದು.

**37. ವಿನಿಯಮಗಳ ತಿದ್ದುಪಡಿಗೆ ಅಧಿಕಾರ.–** ವ್ಯವಸ್ಥಾಪನಾ ಮಂಡಳಿಯ ಅನುಮೋದನೆಯೊಡನೆ ಶೈಕ್ಷಣಿಕ ಪರಿಷತ್ತು ಹೊಸ ವಿನಿಯಮಗಳನ್ನು ಅಥವಾ ಹೆಚ್ಚುವರಿ ವಿನಿಯಮಗಳನ್ನು ರಚಿಸಬಹುದು ಅಥವಾ ವಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ನಿರಸನಗೊಳಿಸಬಹುದು.

**38. ಶುಲ್ಕ ನಿಗದಿ.–** (1) 9ನೇ ಪ್ರಕರಣದ ಪರಂತುಕದ ಅಡಿಯಲ್ಲಿ ರಾಜ್ಯ ಸರ್ಕಾರದ ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡಲಾದ ಪ್ರವೇಶಗಳಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳಲ್ಲಿನ ಶೇಕಡಾ ನಲವತ್ತರಷ್ಟು ಪ್ರವೇಶಗಳ ಸಂಬಂಧದಲ್ಲಿ ಶುಲ್ಕವು ಸರ್ಕಾರ ಮತ್ತು ವಿಶ್ವವಿದ್ಯಾಲಯವು ಸಮ್ಮತಾಭಿಪ್ರಾಯದ ಒಪ್ಪಂದದ ಪ್ರಕಾರ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) ಅಧಿನಿಯಮ, 2006ರ (2006ರ ಕರ್ನಾಟಕ ಅಧಿನಿಯಮ 8) ಅನುಸಾರವಾಗಿ ಸರ್ಕಾರಿ ಸೀಟುಗಳಿಗಾಗಿ ರಾಜ್ಯ ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸಿದಂತೆ ಇರತಕ್ಕದ್ದು.

(2) ವಿಶ್ವವಿದ್ಯಾಲಯದ ಇತರ ಸೀಟುಗಳಿಗೆ ಸಂಬಂಧಿಸಿದಂತೆ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳು (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) ಅಧಿನಿಯಮ, 2006ರ (2006ರ ಕರ್ನಾಟಕ ಅಧಿನಿಯಮ 8) 6ನೇ ಪ್ರಕರಣದ ಉಪಬಂಧಗಳ ಅನುಸಾರವಾಗಿ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರ ಅಧ್ಯಕ್ಷತೆಯ ಅಡಿಯಲ್ಲಿ ರಚಿಸಲಾದ ಶುಲ್ಕ ನಿಯಂತ್ರಣ ಸಮಿತಿಯ ಮೂಲಕ ಶುಲ್ಕವನ್ನು ನಿಗದಿಪಡಿಸತಕ್ಕದ್ದು. ಈ ಪ್ರಕರಣದ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವನ್ನು ಖಾಸಗಿ ಅನುದಾನರಹಿತ ವೃತ್ತಿಪರ ಶಿಕ್ಷಣ ಸಂಸ್ಥೆ ಎಂದು ಭಾವಿಸತಕ್ಕದ್ದು.

## ಅಧ್ಯಾಯ – VI

## ಸಂಕೀರ್ಣ

**39. ನೌಕರರ ಸೇವಾ ಷರತ್ತುಗಳು.–** (1) ಪರಿನಿಯಮಗಳ ಮತ್ತು ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಥವಾ ನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳು, ಯಾವುದಾದರೂ ಇದ್ದಲ್ಲಿ, ಅವುಗಳಿಗೆ ಒಳಪಟ್ಟು ಪ್ರತಿಯೊಬ್ಬ ನೌಕರನು ಲಿಖಿತ ಕರಾರಿನ ಅಡಿಯಲ್ಲಿ ನೇಮಕಗೊಳ್ಳತಕ್ಕದ್ದು ಮತ್ತು ಅದನ್ನು ವಿಶ್ವವಿದ್ಯಾಲಯದಲ್ಲಿ ಇಟ್ಟುಕೊಳ್ಳತಕ್ಕದ್ದು ಹಾಗೂ ಅದರ ಪ್ರತಿಯನ್ನು ಸಂಬಂಧಪಟ್ಟ ನೌಕರನಿಗೆ ನೀಡತಕ್ಕದ್ದು.

(2) ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಕಾರ್ಯವಿಧಾನಗಳ ಮೂಲಕ ನಿಯಂತ್ರಿಸತಕ್ಕದ್ದು.

(3) ಕರಾರಿನಿಂದಾಗಿ ವಿಶ್ವವಿದ್ಯಾಲಯ ಮತ್ತು ನೌಕರನ ಮಧ್ಯದಲ್ಲಿ ಉದ್ಭವಿಸಬಹುದಾದ ಯಾವುದೇ ವಿವಾದವನ್ನು, ಲಿಖಿತ ಕರಾರಿನಲ್ಲಿ ಉಪಬಂಧಿಸಿದ ವಿಧಾನದಲ್ಲಿ ಹಾಗೂ ಪರಿನಿಯಮಗಳ ಅನುಸಾರವಾಗಿ ಪರಿಹರಿಸತಕ್ಕದ್ದು.

**40. ಮೇಲ್ಮನವಿ ಹಕ್ಕು.–** ವಿಶ್ವವಿದ್ಯಾಲಯವು ತನ್ನ ನೌಕರರ ಅಥವಾ ವಿದ್ಯಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡ ಸಂದರ್ಭದಲ್ಲಿ, ಬಾಧಿತ ನೌಕರ ಅಥವಾ ವಿದ್ಯಾರ್ಥಿಗಳು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಮೇಲ್ಮನವಿ ಹಕ್ಕನ್ನು ಹೊಂದಿರತಕ್ಕದ್ದು.

**41. ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿ .–** ವಿಶ್ವವಿದ್ಯಾಲಯವು, ತನ್ನ ನೌಕರರ ಪ್ರಯೋಜನಕ್ಕಾಗಿ, ಪರಿನಿಯಮಗಳು ಮತ್ತು ಜಾರಿಯಲ್ಲಿರುವ ಕಾನೂನುಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿಯನ್ನು ರಚಿಸತಕ್ಕದ್ದು ಹಾಗೂ ಅಂಥ ವಿಮಾ ಯೋಜನೆಗಳನ್ನು ಒದಗಿಸತಕ್ಕದ್ದು.

**42. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಇತರ ಸಂಸ್ಥೆಯ ಸದಸ್ಯನಾಗಿ ಯಾವೊಬ್ಬ ವ್ಯಕ್ತಿಯು ಸೂಕ್ತವಾಗಿ ಆಯ್ಕೆಯಾಗಿದ್ದಾನೆಯೇ ಅಥವಾ ನೇಮಕಗೊಂಡಿದ್ದಾನೆಯೇ ಅಥವಾ ಅದಕ್ಕೆ ಅರ್ಹನಾಗಿದ್ದಾನೆಯೇ ಎಂಬ ಯಾವುದೇ ಪ್ರಶ್ನೆ ಉದ್ಭವಿಸಿದರೆ, ಆ ವಿಷಯವನ್ನು ತೀರ್ಮಾನಕ್ಕಾಗಿ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**43. ಸಮಿತಿಗಳ ರಚನೆ.–** 22ನೇ ಪ್ರಕರಣದಲ್ಲಿ ನಮೂದಿಸಿದ ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಅಧಿಕಾರವನ್ನು ಹೊಂದಿರುವ ಅಂಥ ಸದಸ್ಯರನ್ನು ಒಳಗೊಂಡ ಅಂಥ ಪ್ರಾಧಿಕಾರದ ಒಂದು ಸಮಿತಿಯನ್ನು ರಚಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**44. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಂಸ್ಥೆಯ ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ಪೈಕಿ ಯಾವುದೇ ಸ್ಥಾನವು ಆಕಸ್ಮಿಕವಾಗಿ ಖಾಲಿಯಾದರೆ, ಯಾರ ಸ್ಥಾನವು ಖಾಲಿಯಾಗಿ ತುಂಬಬೇಕಾಗಿ ಬಂದಿದೆಯೋ ಆ ಸದಸ್ಯನನ್ನು ಯಾವ ರೀತಿಯಲ್ಲಿ ಆರಿಸಲಾಗಿತ್ತೋ ಅದೇ ರೀತಿಯಲ್ಲಿ ಹೊಸ ಸದಸ್ಯನನ್ನು ಆರಿಸಿ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ಖಾಲಿ ಸ್ಥಾನವನ್ನು ಭರ್ತಿ ಮಾಡಿದ ವ್ಯಕ್ತಿಯು ಆತನು ಯಾವ ಸದಸ್ಯನ ಸ್ಥಾನದಲ್ಲಿ ಭರ್ತಿಯಾಗಿರುವನೋ ಆ ಸದಸ್ಯನು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯನಾಗಿ ಉಳಿಯುತ್ತಿದ್ದ ಬಾಕಿ ಅವಧಿಯವರೆಗೆ ಮಾತ್ರ ಸದಸ್ಯನಾಗಿರತಕ್ಕದ್ದು.

**45. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.–** ಈ ಅಧಿನಿಯಮ ಅಥವಾ ಪರಿನಿಯಮಗಳು ಅಥವಾ ನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ವಿಶ್ವವಿದ್ಯಾಲಯದ ಯಾವೊಬ್ಬ ಅಧಿಕಾರಿ ಅಥವಾ ಇತರ ನೌಕರರ ವಿರುದ್ಧ ಯಾವುದೇ ದಾವೆ ಅಥವಾ ಇತರ ಕಾನೂನು ವ್ಯವಹರಣೆಗಳನ್ನು ನಡೆಸಲು ಅವಕಾಶ ಇರತಕ್ಕದ್ದಲ್ಲ.

**46. ತಾತ್ಕಾಲಿಕ ಉಪಬಂಧಗಳು.**– ಈ ಅಧಿನಿಯಮ ಮತ್ತು ಪರಿನಿಯಮಗಳ ಯಾವುದೇ ಇತರ ಉಪಬಂಧಗಳಲ್ಲಿ ಏನೇ ಇದ್ದರೂ,–

(i) ಮೊದಲ ಕುಲಪತಿ ಮತ್ತು ಸಹಕುಲಪತಿ, ಯಾರಾದರೂ ಇದ್ದರೆ, ಅವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(ii) ಮೊದಲ ಕುಲಸಚಿವರನ್ನು ಮತ್ತು ಮೊದಲ ಹಣಕಾಸು ಅಧಿಕಾರಿಯವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು; ಮತ್ತು

(iii) ಮೊದಲ ವ್ಯವಸ್ಥಾಪನ ಮಂಡಳಿ, ಮೊದಲ ಹಣಕಾಸು ಸಮಿತಿ, ಮೊದಲ ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಹಾಗೂ ಮೊದಲ ಶೈಕ್ಷಣಿಕ ಪರಿಷತ್ತನ್ನು ಕುಲಾಧಿಪತಿಯವರು ರಚಿಸತಕ್ಕದ್ದು.

**47. ಶಾಶ್ವತ ಶಾಸನಬದ್ಧ ದತ್ತಿ ನಿಧಿ.**– (1) ವಿಶ್ವವಿದ್ಯಾಲಯವು, ಕನಿಷ್ಠ ಇಪ್ಪತ್ತೈದು ಕೋಟಿ ರೂಪಾಯಿಗಳನ್ನುಳ್ಳ ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರ ಪೈಕಿ ಕನಿಷ್ಠ ಹದಿನೈದು ಕೋಟಿ ರೂಪಾಯಿಗಳು ನಗದು ರೂಪದಲ್ಲಿ ಮತ್ತು ಇನ್ನುಳಿದದ್ದು ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ಇರತಕ್ಕದ್ದು ಮತ್ತು ಇದನ್ನು ತಾನಾಗಿಯೆ ಹೆಚ್ಚಿಸಬಹುದಾಗಿದ್ದು, ಆದರೆ ಕಡಿಮೆ ಮಾಡತಕ್ಕದ್ದಲ್ಲ:

ಪರಂತು, ಬೆಂಗಳೂರು ಅಥವಾ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊರಗಿರುವ ವಿಶ್ವವಿದ್ಯಾಲಯದ ಸಂದರ್ಭದಲ್ಲಿ ಕನಿಷ್ಠ ಹತ್ತು ಕೋಟಿ ರೂಪಾಯಿಗಳು ನಗದು ರೂಪದಲ್ಲಿರತಕ್ಕದ್ದು ಮತ್ತು ಉಳಿದ ಐದು ಕೋಟಿ ರೂಪಾಯಿಗಳು ಬ್ಯಾಂಕ್ ಗ್ಯಾರಂಟಿಯ ರೂಪದಲ್ಲಿರತಕ್ಕದ್ದು.

(2) ವಿಶ್ವವಿದ್ಯಾಲಯವು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಹಣವನ್ನು ಹೂಡಲು ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯವು ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಗೆ ವರ್ಗಾವಣೆ ಮಾಡಬಹುದು. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನೂ ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(4) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಿದ ವರಮಾನದ ಶೇಕಡಾ ಎಪ್ಪತ್ತೈದರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತೈದರಷ್ಟನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಯಲ್ಲಿ ಪುನ: ತೊಡಗಿಸತಕ್ಕದ್ದು.

**48. ವಿಶ್ವವಿದ್ಯಾಲಯದ ದತ್ತಿ ನಿಧಿ.**– (1) ವಿಶ್ವವಿದ್ಯಾಲಯವು, ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ನಿಧಿಗಳನ್ನು ಒಳಗೊಂಡ ವಿಶ್ವವಿದ್ಯಾಲಯದ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದು ಕಾಲಕಾಲಕ್ಕೆ ಸ್ವೀಕರಿಸಬಹುದಾದ ದೇಣಿಗೆಗಳು ಮತ್ತು ಇತರ ನಿಧಿಗಳನ್ನು ಒಳಗೊಂಡಿರತಕ್ಕದ್ದು.

(2) ವಿಶ್ವವಿದ್ಯಾಲಯವು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ವಿಶ್ವವಿದ್ಯಾಲಯದ ದತ್ತಿನಿಧಿಯನ್ನು ಹೂಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯ ದತ್ತಿ ನಿಧಿಯು, ವಿಶ್ವವಿದ್ಯಾಲಯವು ತನ್ನ ಸಾಮಾಜಿಕ ಧ್ಯೇಯೋದ್ದೇಶಗಳನ್ನು ನೆರವೇರಿಸುವ ಸಂದರ್ಭದಲ್ಲಿ ಮತ್ತು/ಅಥವಾ ಮುಂಗಾಣದ ಸನ್ನಿವೇಶದಲ್ಲಿ ಉದ್ಭವಿಸಬಹುದಾದ ಹಣಕಾಸು ಸವಾಲುಗಳಿಂದ ತನ್ನನ್ನು ರಕ್ಷಿಸಿಕೊಳ್ಳುವುದಕ್ಕಾಗಿ, ಸ್ವಇಚ್ಛೆಯಿಂದ ನಿರ್ವಹಿಸಿಕೊಂಡು ಬರಲು ಮತ್ತು ಜವಾಬ್ದಾರಿಯಿಂದ ಹಣ ಹೂಡಿಕೆ ಮಾಡಲು ಇಚ್ಛೆಯುಳ್ಳವರಾಗಿ ಸ್ವಯಂ ವಿಧಿಸಿಕೊಂಡ ನಿಧಿಯಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಗೆ ವರ್ಗಾಯಿಸಬಹುದು. ವಿಶ್ವವಿದ್ಯಾಲಯದ ಸಮಾಪಣೆಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನು ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(5) ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಬರುವ ವರಮಾನದ ಶೇಕಡಾ ಎಂಭತ್ತರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸದ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತರಷ್ಟನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**49. ಸಾಮಾನ್ಯ ನಿಧಿ.**– (1) ವಿಶ್ವವಿದ್ಯಾಲಯವು, ಒಂದು ಸಾಮಾನ್ಯ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

ವಿಶ್ವವಿದ್ಯಾಲಯವು ವಿಧಿಸಬಹುದಾದ ಎಲ್ಲಾ ಶುಲ್ಕಗಳು

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವುದೇ ಇತರ ಮೂಲದಿಂದ ಸ್ವೀಕರಿಸಲಾದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ದೇಣಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು ಅಥವಾ ವಂತಿಗೆಗಳು;

(2) ಸಾಮಾನ್ಯ ನಿಧಿಗೆ ಜಮಾ ಮಾಡುವ ನಿಧಿಗಳನ್ನು ವಿಶ್ವವಿದ್ಯಾಲಯದ ಎಲ್ಲಾ ಆವರ್ತಕ ವೆಚ್ಚಗಳನ್ನು ಭರಿಸಲು ಉಪಯೋಗಿಸಕೊಳ್ಳತಕ್ಕದ್ದು.

**50. ಅಭಿವೃದ್ಧಿ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಅಭಿವೃದ್ಧಿ ನಿಧಿಯನ್ನು ಸಹ ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ವಿದ್ಯಾರ್ಥಿಗಳಿಂದ ವಿಧಿಸಬಹುದಾದ ಅಭಿವೃದ್ಧಿ ಶುಲ್ಕಗಳು;

(ii) ವಿಶ್ವವಿದ್ಯಾಲಯದ ಅಭಿವೃದ್ಧಿಯ ಉದ್ದೇಶಗಳಿಗಾಗಿ ಯಾವುದೇ ಇತರ ಮೂಲಗಳಿಂದ ಸ್ವೀಕರಿಸಿದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ವಂತಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು ಅಥವಾ ವಂತಿಗೆಗಳು; ಮತ್ತು

(v) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಲಾದ ಎಲ್ಲಾ ವರಮಾನಗಳು.

(2) ಅಭಿವೃದ್ಧಿ ನಿಧಿಗೆ ಕಾಲಕಾಲಕ್ಕೆ ಜಮಾ ಮಾಡಿದ ನಿಧಿಯನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಉಪಯೋಗಿಸಕೊಳ್ಳತಕ್ಕದ್ದು.

**51. ನಿಧಿಗಳ ನಿರ್ವಹಣೆ.–** 47, 48, 49 ಮತ್ತು 50ನೇ ಪ್ರಕರಣಗಳಡಿಯಲ್ಲಿ ಸ್ಥಾಪಿಸಲಾದ ನಿಧಿಗಳನ್ನು ಪ್ರಬಂಧಕ ಮಂಡಳಿಯ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ನಿಯಂತ್ರಿಸತಕ್ಕದ್ದು ಹಾಗೂ ನಿರ್ವಹಿಸತಕ್ಕದ್ದು.

**52. ವಾರ್ಷಿಕ ವರದಿ.–** (1) ವಿಶ್ವವಿದ್ಯಾಲಯದ ವಾರ್ಷಿಕ ವರದಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ಅದರ ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಪ್ರಬಂಧಕ ಮಂಡಳಿಯು ವಾರ್ಷಿಕ ವರದಿಯನ್ನು ತನ್ನ ಸಭೆಯಲ್ಲಿ ಪರಿಗಣಿಸತಕ್ಕದ್ದು ಹಾಗೂ ಅದನ್ನು ಮಾರ್ಪಾಡುಗಳೊಡನೆ ಅಥವಾ ಮಾರ್ಪಾಡುಗಳಿಲ್ಲದೆ ಅನುಮೋದಿಸಬಹುದು.

(3) ಪ್ರಬಂಧಕ ಮಂಡಳಿಯು ಸೂಕ್ತವಾಗಿ ಅನುಮೋದಿಸಿದ ವಾರ್ಷಿಕ ವರದಿಯ ಒಂದು ಪ್ರತಿಯನ್ನು ಪ್ರತಿವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ಡಿಸೆಂಬರ್ 31ಕ್ಕೆ ಮೊದಲು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**53. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.–** (1) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕ ಪತ್ರ ಮತ್ತು ಜಮಾ ಖರ್ಚು ಪಟ್ಟಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯಕ್ಕೆ ಎಲ್ಲಾ ಮೂಲಗಳಿಂದ ಪ್ರಾಪ್ತವಾಗುವ ಅಥವಾ ಸ್ವೀಕರಿಸಲಾಗುವ ಎಲ್ಲಾ ನಿಧಿಗಳು ಹಾಗೂ ವಿತರಿಸಿದ ಅಥವಾ ಸಂದಾಯ ಮಾಡಿದ ಎಲ್ಲಾ ಮೊಬಲಗುಗಳನ್ನು ವಿಶ್ವವಿದ್ಯಾಲಯವು ನಿರ್ವಹಿಸುವ ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕಪತ್ರಗಳನ್ನು ಪ್ರತಿ ವರ್ಷವೂ ಭಾರತದ ಚಾರ್ಟೆಡ್ ಅಕೌಟೆಂಟ್‌ಗಳ ಸಂಸ್ಥೆಯ ಸದಸ್ಯರಾಗಿರುವ ಒಬ್ಬ ಲೆಕ್ಕಪರಿಶೋಧಕರಿಂದ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಲೆಕ್ಕಪರಿಶೋಧನಾ ವರದಿಯೊಡನೆ, ಪ್ರತಿ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ನವೆಂಬರ್ 30ಕ್ಕೆ ಮೊದಲು ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(4) ವಾರ್ಷಿಕ ಲೆಕ್ಕಪತ್ರಗಳು, ಜಮಾಖರ್ಚು ಪಟ್ಟಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಪ್ರಬಂಧಕ ಡಳಿಯು ತನ್ನ ಸಭೆಯಲ್ಲಿ ಪರ್ಯಾಲೋಚಿಸತಕ್ಕದ್ದು ಮತ್ತು ಪ್ರಬಂಧಕ ಮಂಡಳಿಯು ಅದನ್ನು ತನ್ನ ಅಭಿಪ್ರಾಯಗಳೊಡನೆ ಸಂದರ್ಶಕರಿಗೆ ಹಾಗೂ ಸರ್ಕಾರಕ್ಕೆ ಪ್ರತಿ ವರ್ಷದ ಡಿಸೆಂಬರ್ 31ಕ್ಕೆ ಮೊದಲು ಕಳುಹಿಸತಕ್ಕದ್ದು.

(5) ಲೆಕ್ಕಪರಿಶೋಧಕರ ವರದಿಯಲ್ಲಿ ಯಾವುದೇ ಮುಖ್ಯ ಬದಲಾವಣೆ ಇದ್ದ ಸಂದರ್ಭದಲ್ಲಿ, ಅವುಗಳನ್ನು ಸರಿಪಡಿಸಲು, ರಾಜ್ಯ ಸರ್ಕಾರವು ವಿಶ್ವವಿದ್ಯಾಲಯಕ್ಕೆ ನಿರ್ದೇಶನಗಳನ್ನು ಹೊರಡಿಬಹುದು ಮತ್ತು ಅಂಥ ನಿರ್ದೇಶನಗಳು ವಿಶ್ವವಿದ್ಯಾಲಯದ ಮೇಲೆ ಬಂಧನಕಾರಿಯಾಗಿರತಕ್ಕದ್ದು.

**54. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಮಿತಿಯ ಯಾವುದೇ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ ಅಥವಾ ಗೊತ್ತುವಳಿಯು ಅಥವಾ ವಿಶ್ವವಿದ್ಯಾಲಯದ ಸ್ವಾಧೀನದಲ್ಲಿರುವ ಇತರ ದಾಖಲೆಗಳು ಅಥವಾ ವಿಶ್ವವಿದ್ಯಾಲಯವು ಯುಕ್ತವಾಗಿ ನಿರ್ವಹಿಸುವ ಯಾವುದೇ ರಿಜಿಸ್ಟರ್‌ನಲ್ಲಿಯ ಯಾವುದೇ ನಮೂದುಗಳ ಪ್ರತಿಯನ್ನು, ಅದರ ಮೇಲೆ ಕುಲಸಚಿವರು ಪ್ರಮಾಣೀಕರಿಸಿದ್ದರೆ, ಅದನ್ನು ಅಂಥ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ, ಗೊತ್ತುವಳಿ ಅಥವಾ ದಾಖಲೆ ಅಥವಾ ರಿಜಿಸ್ಟರ್‌ನಲ್ಲಿ ಇರುವ ನಮೂದನ್ನು ಮೇಲ್ನೋಟದ ಸಾಕ್ಷ್ಯವೆಂಬುದಾಗಿ ಸ್ವೀಕರಿಸತಕ್ಕದ್ದು ಮತ್ತು ವಿಷಯಗಳ ಸಾಕ್ಷಿಯಾಗಿ ಅಂಗೀಕರಿಸತಕ್ಕದ್ದು ಹಾಗೂ ಮೂಲ ದಾಖಲೆಗಳನ್ನೇ ಸಲ್ಲಿಸಿದ್ದರೆ ಅದನ್ನು, ದಾಖಲಿಸಿರುವ ವಿಷಯಗಳು ಮತ್ತು ವಹಿವಾಟುಗಳ ಸಾಕ್ಷ್ಯವಾಗಿ ಅಂಗೀಕರಿಸಲಾಗುತ್ತಿತ್ತೋ, ಅದೇ ರೀತಿಯಲ್ಲಿ ಇವನ್ನೂ ಸಾಕ್ಷ್ಯವಾಗಿ ಅಂಗೀಕರಿಸತಕ್ಕದ್ದು.

**55. ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ.–** ರಾಜ್ಯಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಥವಾ ಅದರಲ್ಲಿ ಇರುವ ಯಾವುವೇ ಉಪಬಂಧಗಳನ್ನು ಅಥವಾ ಅದರಡಿಯಲ್ಲಿ ರಚಿಸಿದ ಯಾವುವೇ ನಿಯಮಗಳು ಅಥವಾ ಆದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿರ್ದೇಶನ ನೀಡುವುದು ಅವಶ್ಯವೆಂದು ಅಥವಾ ಉಚಿತವೆಂದು ಅಭಿಪ್ರಾಯಪಟ್ಟಲ್ಲಿ ಅದು ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ ಅಥವಾ ಸಂದರ್ಭಾನುಸಾರವಾಗಿ ವ್ಯವಸ್ಥಾಪನಾ ಮಂಡಳಿಯು ಅಂಥ ಪ್ರತಿಯೊಂದು ನಿರ್ದೇಶನವನ್ನು ಪಾಲಿಸತಕ್ಕದ್ದು.

**56. ದಂಡಗಳು.–** (1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿತವಾದ ನಿಯಮಗಳು ಉಪಬಂಧಗಳನ್ನು ಅಥವಾ ಯಾವುದೇ ಪರೀಕ್ಷಾ ವಿಷಯಗಳನ್ನು ಅಥವಾ ಪದವಿಗಳನ್ನು ನೀಡುವುದಕ್ಕೆ ಅಥವಾ ಅಂಕಪಟ್ಟಿಗಳನ್ನು ನೀಡುವುದಕ್ಕೆ ಸಂಬಂಧಪಟ್ಟ ವಿಷಯಗಳಲ್ಲಿ ಉಲ್ಲಂಘನೆಗಳನ್ನು ಮಾಡುವ ಯಾವೊಬ್ಬ ವ್ಯಕ್ತಿಯು, ಅಪರಾಧ ನಿರ್ಣಯವಾದ ಮೇಲೆ, ಐವತ್ತು ಸಾವಿರ ರೂಪಾಯಿಗಳಿಗೆ ಕಡಿಮೆಯಲ್ಲದ ಆದರೆ ಹತ್ತು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಆರು ತಿಂಗಳ ಅವಧಿಗಿಂತ ಕಡಿಮೆಯಲ್ಲದ ಆದರೆ ಎರಡು ವರ್ಷಗಳ ಅವಧಿಯವರೆಗೆ ವಿಸ್ತರಿಸಬಹುದಾದ ಕಾರಾವಾಸದಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು:

ಪರಂತು, ಅಪರಾಧವನ್ನು ಎಸಗುವಲ್ಲಿ ವಿಶ್ವವಿದ್ಯಾಲಯವೂ ಸಹ ಒಳಗೊಂಡಿರುವಲ್ಲಿ, ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಈ ಅಧಿನಿಯಮದ ಅಡಿಯಲ್ಲಿ ಮಂಜೂರು ಮಾಡಲಾದ ಅನುಮತಿ ಪತ್ರವನ್ನು ಹಿಂತೆಗೆದುಕೊಳ್ಳತಕ್ಕದ್ದು.

(2) ಈ ಪ್ರಕರಣದ ಅಡಿಯಲ್ಲಿಯ ದಂಡವನ್ನು ಇತರ ಯಾವುದೇ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಲಾದ ದಂಡಕ್ಕೆ ಬಾಧಕವಾಗದಂತೆ ವಿಧಿಸಬಹುದು.

**57. ಪ್ರವೇಶಿಸುವ ಮತ್ತು ಪರಿಶೋಧಿಸುವ ಅಧಿಕಾರ.–** ಈ ಉದ್ದೇಶಕ್ಕಾಗಿ, ರಾಜ್ಯಸರ್ಕಾರದಿಂದ ಪ್ರಾಧಿಕೃತಗೊಂಡ 'ಎ' ಸಮೂಹದ ಅಧಿಕಾರಿ ದರ್ಜೆಗಿಂತ ಕಡಿಮೆಇಲ್ಲದ ದರ್ಜೆಯ ಯಾವೊಬ್ಬ ಅಧಿಕಾರಿಯು, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಶನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ 37) ಅಡಿಯಲ್ಲಿ ನಿರ್ದಿಷ್ಟಪಡಿಸಿರಬಹುದಾದ ಅಂಥ ಷರತ್ತುಗಳಿಗೆ ಒಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ, ಆ ಅಧಿನಿಯಮದ 9ನೇ ಪ್ರಕರಣದ ಅಡಿಯಲ್ಲಿ ಉಪಬಂಧಿಸಲಾದಂತಹವೇ ಅಧಿಕಾರಗಳನ್ನು ಚಲಾಯಿಸಲು ಮತ್ತು ಪ್ರಕಾರ್ಯಗಳನ್ನು ನೆರವೇರಿಸಲು ಅಧಿಕೃತನಾದ ಅಧಿಕಾರಿ ಎಂಬುದಾಗಿ ಭಾವಿಸತಕ್ಕದ್ದು.

**58. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ನಿರ್ದೇಶನವನ್ನು ನೀಡುವ ಅಧಿಕಾರ.–** (1) ವಿಶ್ವವಿದ್ಯಾಲಯವು ತನ್ನ ರಚನೆ ಅಥವಾ ನಿಗಮನವನ್ನು ನಿಯಂತ್ರಿಸುವ ಕಾನೂನಿಗೆ ಅನುಸಾರವಾಗಿ ತನ್ನ ಸಮಾಪನವನ್ನು ಉದ್ದೇಶಿಸಿದ್ದಲ್ಲಿ, ಅದು ಕನಿಷ್ಠ ಆರು ತಿಂಗಳ ಲಿಖಿತ ಪೂರ್ವ ಸೂಚನೆಯನ್ನು (ನೋಟಿಸು) ಸರ್ಕಾರಕ್ಕೆ ನೀಡತಕ್ಕದ್ದು.

(2) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಈ ಕೆಳಗಿನವುಗಳ ಬಗ್ಗೆ, ಎಂದರೆ:–

(i) ಪದವಿಯನ್ನು ನೀಡುವುದಕ್ಕಾಗಿ ಬೋಧನೆಯ ಗುಣಮಟ್ಟ

(ii) ಶಿಕ್ಷಣದ ಗುಣಮಟ್ಟ;

(iii) ಉನ್ನತ ಶಿಕ್ಷಣದ ವ್ಯಾಪಾರೀಕರಣವನ್ನು ತಡೆಗಟ್ಟುವುದು;

(iv) ಅಧಿನಿಯಮದ ಉಪಬಂಧಗಳ ಉಲ್ಲಂಘನೆಯ ಬಗ್ಗೆ, ಯಾವುದಾದರೂ ಇದ್ದಲ್ಲಿ,

– ಇವುಗಳ ಬಗ್ಗೆ ನಿಯತಕಾಲಿಕ ಪರಿವೀಕ್ಷಣೆಯನ್ನು ನಡೆಸತಕ್ಕದ್ದು ಮತ್ತು ಸರ್ಕಾರಕ್ಕೆ ವರದಿಯನ್ನು ಕಳುಹಿಸತಕ್ಕದ್ದು.

(3) ದುರ್ವ್ಯವಹರಣೆ, ದುರಾಡಳಿತ ಮತ್ತು ಅಶಿಸ್ತು ಆಗಿದೆ ಎಂಬುದನ್ನು ಗುರುತಿಸಿದರೆ, ಸರ್ಕಾರವು, ವಿಶ್ವವಿದ್ಯಾಲಯದ ಆಡಳಿತವರ್ಗದವರಿಗೆ ಆಡಳಿತವನ್ನು ಸರಿಪಡಿಸಬೇಕೆಂದು ನಿರ್ದೇಶನಗಳನ್ನು ನೀಡತಕ್ಕದ್ದು. ನಿಯಮಿಸಬಹುದಾದ ಅಂಥ ಅವಧಿಯೊಳಗೆ ಆ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುವ ಹಕ್ಕು ಸರ್ಕಾರದಲ್ಲಿ ನಿಹಿತವಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ವಿಧಾನವು, ಸರ್ಕಾರವು ಈ ಸಂಬಂಧದಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು:

ಪರಂತು, ವಿಶ್ವವಿದ್ಯಾಲಯವು ತನ್ನ ಕಾರಣಗಳನ್ನು ಹೇಳಿಕೊಳ್ಳಲು ಸಮಂಜಸ ಅವಕಾಶಗಳನ್ನು ನೀಡಿದ ಹೊರತು ಅಂಥ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

(5) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೋಟಿಸನ್ನು ಸ್ವೀಕರಿಸಿದ ಮೇಲೆ, ಸರ್ಕಾರವು ಸಂಬಂಧಿಸಿದ ನಿಯಂತ್ರಣಾ ಪ್ರಾಧಿಕಾರದೊಡನೆ ಸಮಾಲೋಚಿಸಿ, ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ಅಥವಾ ವ್ಯಾಸಂಗ ಕ್ರಮವನ್ನು ಪರಿಸಮಾಪನಗೊಳಿಸಲು ಉದ್ದೇಶಿಸಿದ ದಿನಾಂಕದಿಂದ, ವಿಶ್ವವಿದ್ಯಾಲಯದಲ್ಲಿ ನಿಯತ ವ್ಯಾಸಂಗ ಕ್ರಮಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕೊನೆಯ ತಂಡ (ಬ್ಯಾಚ್) ತನ್ನ ವ್ಯಾಸಂಗ ಕ್ರಮವನ್ನು ಮುಗಿಸುವವರೆಗೆ ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು.

**59. ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು.**– (1) 58ನೇ ಪ್ರಕರಣದ (5)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ಅದರ ಆಡಳಿತಾತ್ಮಕ ವೆಚ್ಚಗಳನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಭರಿಸತಕ್ಕದ್ದು.

(2) ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ವಿಶ್ವವಿದ್ಯಾಲಯದ ವೆಚ್ಚವನ್ನು ಭರಿಸಲು 47, 48, 49, ಮತ್ತು 50ನೇ ಪ್ರಕರಣಗಳ ಅಡಿಯಲ್ಲಿ ಉಲ್ಲೇಖಿಸಲಾದ ನಿಧಿಯು ಸಾಕಷ್ಟು ಇಲ್ಲದಿದ್ದಲ್ಲಿ, ಅಂಥ ವೆಚ್ಚವನ್ನು ಸರ್ಕಾರವು, ವಿಶ್ವವಿದ್ಯಾಲಯದ ಸ್ವತ್ತುಗಳು ಮತ್ತು ಆಸ್ತಿಗಳನ್ನು ವಿಲೇ ಮಾಡುವ ಮೂಲಕ ಭರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಸಮಾಪನೆಯು ದುರ್ವ್ಯವಹರಣೆ ಅಥವಾ ದುರಾಡಳಿತದ ಕಾರಣಗಳಿಗಾಗಿ ಆಗಿದ್ದರೆ, ಸರ್ಕಾರವು ಅಂಥ ದುರ್ವ್ಯವಹಾರಕ್ಕೆ ಅಥವಾ ದುರಾಡಳಿತಕ್ಕೆ ಹೊಣೆಯಾಗಿರುವ ವ್ಯಕ್ತಿಗಳನ್ನು ಗುರುತಿಸುವ ಮತ್ತು ಅವರ ಮೇಲೆ ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ದಂಡನೆಯನ್ನು ವಿಧಿಸಲು ಸ್ವತಂತ್ರವಾಗಿರತಕ್ಕದ್ದು.

**60. ತೊಂದರೆಗಳ ನಿವಾರಣೆಗೆ ಅಧಿಕಾರ.**– (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಅಥವಾ ಆದೇಶದ ಮೂಲಕ ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಐದು ವರ್ಷಗಳು ಮುಕ್ತಾಯವಾದ ತರುವಾಯ ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಅಧಿಸೂಚನೆ ಅಥವಾ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

**61. ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ.**– (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ, ಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಉಭಯ ಸದನಗಳು ಒಪ್ಪಿದರೆ ತದನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ಧತಿಯು ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವನ್ನು ಉಂಟುಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಕೆ.ದ್ವಾರಕನಾಥ್ ಬಾಬು**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ... ಬೆಂಗಳೂರು ... ಪ್ರತಿಗಳು ...

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| | | |
|---|---|---|
| ಭಾಗ - IV-A | ಬೆಂಗಳೂರು, ಶುಕ್ರವಾರ, ಮಾರ್ಚ್ ೧೫, ೨೦೧೩ (ಫಾಲ್ಗುಣ ೨೪, ಶಕ ವರ್ಷ ೧೯೩೪) | ನಂ. ೫೭೯ |
| Part - IV-A | Bangalore, Friday, March 15, 2013 (Phalguna 24, Shaka Varsha 1934) | No. 579 |


ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಂವ್ಯಶಾಇ 27 ಶಾಸನ 2013, ಬೆಂಗಳೂರು, ದಿನಾಂಕ: 15.03.2013

ವೈದೇಹಿ ವಿಶ್ವವಿದ್ಯಾಲಯ ವಿಧೇಯಕ, 2013– ಇದಕ್ಕೆ 2013ರ ಮಾರ್ಚ್ ತಿಂಗಳ ಹನ್ನೆರಡನೇ ದಿನಾಂಕದಂದು ಘನತೆವೆತ್ತ ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2013ರ ಕರ್ನಾಟಕ ಅಧಿನಿಯಮ ಸಂಖ್ಯೆ: 36 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

## 2013 ರ ಕರ್ನಾಟಕ ಅಧಿನಿಯಮ ಸಂಖ್ಯೆ: 36

(2013ರ ಮಾರ್ಚ್ ಮಾಹೆಯ ಹದಿನೈದನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ವೈದೇಹಿ ವಿಶ್ವವಿದ್ಯಾಲಯ ಅಧಿನಿಮಯ, 2013

(2013ರ ಮಾರ್ಚ್ ಮಾಹೆಯ ಹನ್ನೆರಡನೇ ದಿನಾಂಕದಂದು ರಾಜ್ಯಪಾಲರ ಅನುಮತಿಯನ್ನು ಪಡೆಯಲಾಗಿದೆ)

ವೈದ್ಯಕೀಯ, ದಂತ ವೈದ್ಯಕೀಯ, ಔಷಧ ವಿಜ್ಞಾನ, ಫಿಸಿಯೋಥೆರಪಿ, ನರ್ಸಿಂಗ್, ಸಂಬಂಧಿತ ಆರೋಗ್ಯ ವಲಯಗಳು, ಜೀವ ವಿಜ್ಞಾನ, ಜೈವಿಕ ತಂತ್ರಜ್ಞಾನ ಇವುಗಳನ್ನು ಒಳಗೊಂಡ ಆರೋಗ್ಯ ಸಂರಕ್ಷಣೆ ಶಿಕ್ಷಣ ಮತ್ತು ತತ್ಸಂಬಂಧಿ ವಲಯಗಳಲ್ಲಿ ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಉತ್ತೇಜಿಸಲು ಮತ್ತು ಕೈಗೊಳ್ಳಲು ಶ್ರೀನಿವಾಸ ನ್ಯಾಸ, ಬೆಂಗಳೂರು ಇವರ ಮೂಲಕ ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದಕ್ಕಾಗಿ ಒಂದು ಅಧಿನಿಮಯ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ವೈದ್ಯಕೀಯ, ದಂತ ವೈದ್ಯಕೀಯ, ಔಷಧ ವಿಜ್ಞಾನ, ಫಿಸಿಯೋಥೆರಪಿ, ನರ್ಸಿಂಗ್, ಸಂಬಂಧಿತ ಆರೋಗ್ಯ ವಲಯಗಳು, ಜೀವ ವಿಜ್ಞಾನ, ಜೈವಿಕ ತಂತ್ರಜ್ಞಾನ ಇವುಗಳನ್ನು ಒಳಗೊಂಡ ಆರೋಗ್ಯ ಸಂರಕ್ಷಣೆ ಶಿಕ್ಷಣ ಮತ್ತು ತತ್ಸಂಬಂಧಿ ವಲಯಗಳಲ್ಲಿ ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಉತ್ತೇಜಿಸಲು ಮತ್ತು ಕೈಗೊಳ್ಳಲು ಶ್ರೀನಿವಾಸ ನ್ಯಾಸ, ಬೆಂಗಳೂರು ಇವರ ಮೂಲಕ ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತಾಲ್ಕನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:–

## ಅಧ್ಯಾಯ – I

## ಪ್ರಾರಂಭಿಕ

**1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.**– (1) ಈ ಅಧಿನಿಯಮವನ್ನು ವೈದೇಹಿ ವಿಶ್ವವಿದ್ಯಾಲಯ ಅಧಿನಿಯಮ, 2013 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. ಪರಿಭಾಷೆಗಳು.**– ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,–

(ಎ) "ಶೈಕ್ಷಣಿಕ ಪರಿಷತ್ತು (ಅಕೆಡೆಮಿಕ್ ಕೌನ್ಸಿಲ್)" ಎಂದರೆ, 25ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿಸಲಾದ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು;

(ಬಿ) "ಕಾರ್ಯಸೂಚಿ ವಿಷಯಗಳು", ಎಂದರೆ, ಪರಿನಿಯಮಗಳಲ್ಲಿ ಹೆಸರಿಸಬಹುದಾದ ಮತ್ತು ಒಂದು ಸಭೆಯಲ್ಲಿ ಆ ವಿಷಯಗಳನ್ನು ಮತ್ತು ಕಲಾಪಗಳನ್ನು ಅನುಮೋದಿಸಬಹುದೆಂದು ತಮ್ಮ ಸಮ್ಮತಿ ಸೂಚಿಸಿ ಕುಲಾಧಿಪತಿಯವರು ಮುಂಚಿತವಾಗಿಯೇ ಲಿಖಿತ ಅನುಮೋದನೆಯನ್ನು ಕೊಟ್ಟಿದ್ದಾಗ ಮಾತ್ರವೇ ಸಂದರ್ಭಾನುಸಾರ ಪ್ರಬಂಧಕರ ಮಂಡಳಿ ಅಥವಾ ವ್ಯವಸ್ಥಾಪನಾ ಮಂಡಳಿ ಅಥವಾ ಯಾವುದೇ ಸಮಿತಿಯವರು ಕಾರ್ಯಸೂಚಿಯಲ್ಲಿ ಸೇರಿಸಬಹುದಾದ ಅಥವಾ ಸಭೆಯಲ್ಲಿ ಚರ್ಚೆಗೆ ತೆಗೆದುಕೊಂಡು ನಿರ್ಣಯವನ್ನು ಕೊಡಬಹುದಾದ ಎಲ್ಲಾ ವಿಷಯಗಳು ಮತ್ತು ಕಲಾಪಗಳು;

(ಸಿ) "ಪ್ರಬಂಧಕರ ಮಂಡಳಿ" ಎಂದರೆ, 23ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಪ್ರಬಂಧಕರ ಮಂಡಳಿ;

(ಡಿ) "ವ್ಯವಸ್ಥಾಪನಾ ಮಂಡಳಿ" ಎಂದರೆ 24ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದಂತೆ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿ ;

(ಇ) "ಕುಲಾಧಿಪತಿ", "ಕುಲಪತಿ", "ಸಹಕುಲಪತಿ" ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ ಮತ್ತು ಸಹಕುಲಪತಿ;

(ಎಫ್) "ಕ್ಯಾಂಪಸ್" ಎಂದರೆ, ಅದು ಎಲ್ಲಾದರೂ ಇರಲಿ ವಿಶ್ವವಿದ್ಯಾಲಯವು ಸ್ಥಾಪಿಸಿದ, ನಿರ್ವಹಿಸುವ ಒಂದು ಕ್ಯಾಂಪಸ್;

(ಜಿ) "ಸಮಿತಿಗಳು" ಎಂದರೆ, ಈ ಅಧಿನಿಯಮದಡಿಯಲ್ಲಿ ರೂಪಿಸಲಾದ ಸಮಿತಿಗಳು ಅಥವಾ ಸಂದರ್ಭಾನುಸಾರವಾಗಿ ವಿಶ್ವವಿದ್ಯಾಲಯದ ವಿವಿಧ ಕಾರ್ಯಕರ್ತರು ರಚಿಸಿರುವ ಸಮಿತಿಗಳು ಮತ್ತು ಅದರಲ್ಲಿ ಶೋಧನಾ ಸಮಿತಿ, ನಾಮನಿರ್ದೇಶನ ಸಮಿತಿ; ಹಣಕಾಸು ಸಮಿತಿ; ಹಣಕಾಸು ಪರಿಷತ್ತು ಮತ್ತು ಅಂಥ ಇತರ ಸಮಿತಿಗಳು ಒಳಗೊಳ್ಳುತ್ತವೆ;

(ಎಚ್) "ಘಟಕ ಕಾಲೇಜು" ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುತ್ತಿರುವ ಒಂದು ಕಾಲೇಜು ಅಥವಾ ಸಂಸ್ಥೆ;

(ಐ) "ಹಣಕಾಸು ಸಮಿತಿ" ಎಂದರೆ, 27ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಹಣಕಾಸು ಸಮಿತಿ;

(ಜೆ) "ಸರ್ಕಾರ" ಎಂದರೆ, ಕರ್ನಾಟಕ ಸರ್ಕಾರ;

(ಕೆ) "ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳು" ಎಂದರೆ, ವಿಶ್ವವಿದ್ಯಾಲಯ ಅನುದಾನ ಆಯೋಗ, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು, ರಾಷ್ಟ್ರೀಯ ಬೋಧಕ ಶಿಕ್ಷಣ ಪರಿಷತ್ತು, ಭಾರತೀಯ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಪರಿಷತ್ತು, ಭಾರತೀಯ ಔಷಧ ವಿಜ್ಞಾನ ಪರಿಷತ್ತು, ರಾಷ್ಟ್ರೀಯ ಮೌಲ್ಯಮಾಪನ ಮತ್ತು ಅಧಿಮಾನ್ಯತಾ ಪರಿಷತ್ತು, ಭಾರತೀಯ ಕೃಷಿ ಸಂಶೋಧನಾ ಪರಿಷತ್ತು, ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಪರಿಷತ್ತು ಮುಂತಾದ ಉನ್ನತ ಶಿಕ್ಷಣದಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುವಂತೆ ನೋಡಿಕೊಳ್ಳುವುದಕ್ಕಾಗಿ ಗುಣಮಟ್ಟಗಳು ಮತ್ತು ಷರತ್ತುಗಳನ್ನು ವಿಧಿಸುವುದಕ್ಕಾಗಿ, ಕೇಂದ್ರ ಸರ್ಕಾರವು ಸ್ಥಾಪಿಸಿರುವ ಒಂದು ಸಂಸ್ಥೆ ಮತ್ತು ಇದರಲ್ಲಿ ಸರ್ಕಾರವೂ ಸೇರಿರುತ್ತದೆ;

(ಎಲ್) "ನಿಯಮಿಸಲಾದುದು" ಎಂದರೆ, ಈ ಅಧಿನಿಯಮದಡಿಯಲ್ಲಿ ಸರ್ಕಾರವು ರಚಿಸಲಾದ ನಿಯಮಗಳ ಮೂಲಕ ನಿಯಮಿಸಲಾದುದು;

(ಎಂ) "ಒಂದು ಘಟಕ ಕಾಲೇಜಿಗೆ ಸಂಬಂಧಪಟ್ಟಂತೆ ಪ್ರಾಂಶುಪಾಲರು" ಎಂದರೆ, ಘಟಕ ಕಾಲೇಜಿನ ಮುಖ್ಯಸ್ಥರು ಮತ್ತು ಪ್ರಾಂಶುಪಾಲರು ಇಲ್ಲದಿದ್ದಲ್ಲಿ ಅಥವಾ ನೇಮಕವಾದ ಪ್ರಾಂಶುಪಾಲರ ಗೈರುಹಾಜರಿಯಲ್ಲಿ, ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ತಾತ್ಕಾಲಿಕವಾಗಿ ನೇಮಕಗೊಂಡಿರುವ ಉಪಪ್ರಾಂಶುಪಾಲರು ಅಥವಾ ಯಾವುದೇ ಇತರ ವ್ಯಕ್ತಿಯೂ ಇದರಲ್ಲಿ ಒಳಗೊಳ್ಳುತ್ತಾರೆ;

(ಎನ್) "ಕುಲಸಚಿವರು" ಎಂದರೆ, ವಿಶ್ವವಿದ್ಯಾಲಯದ ಕುಲಸಚಿವರು;

(ಒ) "ಪ್ರಾದೇಶಿಕ ಕೇಂದ್ರ" ಎಂದರೆ, ಯಾವುದೇ ಪ್ರದೇಶದಲ್ಲಿನ ಅಧ್ಯಯನ ಕೇಂದ್ರಗಳ ಕಾರ್ಯವನ್ನು ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ಮಾಡುವ ಉದ್ದೇಶಕ್ಕಾಗಿ ಮತ್ತು ಅಂಥ ಕೇಂದ್ರಕ್ಕೆ ಕಾರ್ಯಕಾರಿ ಪರಿಷತ್ತು ವಹಿಸಿಕೊಡಬಹುದಾದ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸುವುದಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಅಥವಾ ನಿರ್ವಹಿಸಿಕೊಂಡುಬರುವ ಒಂದು ಕೇಂದ್ರ;

(ಪಿ) ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ "ಪ್ರಾಯೋಜಕ ಪ್ರಾಧಿಕಾರ" ಅಥವಾ "ಪ್ರಾಯೋಜಕ ಸಂಸ್ಥೆ" ಎಂದರೆ ಪ್ರಾಯೋಜಕ ನ್ಯಾಸ;

(ಕ್ಯೂ) "ಪ್ರಾಯೋಜಕ ನ್ಯಾಸ" ಎಂದರೆ ಭಾರತೀಯ ನ್ಯಾಸ ಅಧಿನಿಯಮ, 1882ರ ಅಡಿಯಲ್ಲಿ ನೋಂದಣಿಯಾದ ಶ್ರೀನಿವಾಸ ನ್ಯಾಸ, ಬೆಂಗಳೂರು ;

(ಆರ್) "ರಾಜ್ಯ" ಎಂದರೆ, ಕರ್ನಾಟಕ ರಾಜ್ಯ;

(ಎಸ್) "ಪರಿನಿಯಮಗಳು" ಮತ್ತು "ವಿನಿಯಮಗಳು" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಅನುಕ್ರಮವಾಗಿ ವಿಶ್ವವಿದ್ಯಾಲಯದ ಪರಿನಿಯಮಗಳು ಮತ್ತು ವಿನಿಯಮಗಳು;

(ಟಿ) "ಅಧ್ಯಯನ ಕೇಂದ್ರ" ಎಂದರೆ, ವಿದ್ಯಾರ್ಥಿಗಳಿಗೆ ಅಗತ್ಯವಾದ ಬುದ್ಧಿವಾದ, ಸಲಹೆಗಳನ್ನು ನೀಡುವ ಅಥವಾ ಇತರ ಯಾವುದೇ ನೆರವನ್ನು ನೀಡುವ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಮತ್ತು ನಿರ್ವಹಿಸಿಕೊಂಡುಬಂದ ಒಂದು ಕೇಂದ್ರ;

(ಯು) "ಅಧ್ಯಾಪಕರು" ಎಂದರೆ, ಒಬ್ಬ ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಒಂದು ಘಟಕ ಕಾಲೇಜಿನಲ್ಲಿ ಬೋಧಿಸುವುದಕ್ಕೆ ಅಥವಾ ಸಂಶೋಧನೆ ನಡೆಸುವುದಕ್ಕೆ ಅಥವಾ ಸಂಶೋಧನೆಗೆ ಮಾರ್ಗದರ್ಶನ ನೀಡುವುದಕ್ಕೆ ನೇಮಕವಾದ ಅಂಥ ಇತರ ವ್ಯಕ್ತಿ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗವು ನಿಯಮಿಸಿದ ಗುಣಮಟ್ಟಗಳಿಗೆ ಅನುಸಾರವಾಗಿ ಇರುವ ಘಟಕ ಕಾಲೇಜಿನ ಪ್ರಾಂಶುಪಾಲರು ಇದರಲ್ಲಿ ಒಳಗೊಳ್ಳುತ್ತಾರೆ;

(ವಿ) "ವಿಶ್ವವಿದ್ಯಾಲಯ ಅನುದಾನಗಳ ಆಯೋಗ" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) 4ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ಆಯೋಗ;

(ಡಬ್ಲ್ಯೂ) "ವಿಶ್ವವಿದ್ಯಾಲಯ" ಎಂದರೆ, ಈ ಅಧಿನಿಯಮದಡಿಯಲ್ಲಿ ಸ್ಥಾಪಿಸಿ ನಿಗಮಿತಗೊಳಿಸಲಾದ ವೈದೇಹಿ ವಿಶ್ವವಿದ್ಯಾಲಯ;

(ಎಕ್ಸ್) "ಸಂದರ್ಶಕರು" ಎಂದರೆ, 13ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ವಿಶ್ವವಿದ್ಯಾಲಯದ ಸಂದರ್ಶಕರು.

## ಅಧ್ಯಾಯ– II

## ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

**3. ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ.–** (1) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಹಕ್ಕನ್ನು ಪ್ರಾಯೋಜಕ ನ್ಯಾಸವು ಹೊಂದಿರತಕ್ಕದ್ದು.

(2) ಪ್ರಾಯೋಜಕ ನ್ಯಾಸವು ರಾಜ್ಯ ಸರ್ಕಾರಕ್ಕೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವವನ್ನು ಸಲ್ಲಿಸತಕ್ಕದ್ದು.

(3) ಪ್ರಸ್ತಾವವು ಈ ಮುಂದಿನ ವಿವರಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಪ್ರಾಯೋಜಕ ನ್ಯಾಸದ ವಿವರಗಳೊಂದಿಗೆ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು;

(ii) ವಿಶ್ವವಿದ್ಯಾಲಯದ ವ್ಯಾಪ್ತಿ ಮತ್ತು ಸ್ಥಾನಮಾನ ಹಾಗೂ ಭೂಮಿಯ ಲಭ್ಯತೆ;

(iii) ಪ್ರಾರಂಭದ ದಿನಾಂಕದಿಂದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳಬೇಕೆಂದಿರುವ ಅಧ್ಯಯನ ಮತ್ತು ಸಂಶೋಧನಾ ಕಾರ್ಯಕ್ರಮಗಳ ಸ್ವರೂಪ ಮತ್ತು ಬಗೆಗಳು;

(iv) ಪ್ರಾರಂಭಿಸಬೇಕೆಂದು ಪ್ರಸ್ತಾಪಿಸಿರುವ ವ್ಯಾಸಂಗ ವಿಭಾಗಗಳು (ಫ್ಯಾಕಲ್ಟಿಗಳು), ಅಧ್ಯಯನ ಕ್ರಮಗಳು ಮತ್ತು ಸಂಶೋಧನೆಗಳ ಸ್ವರೂಪ;

(v) ಕಟ್ಟಡಗಳು, ಸಲಕರಣೆಗಳು ಮತ್ತು ರಚನಾ ಸೌಕರ್ಯಗಳನ್ನು ಒದಗಿಸುವಂಥ ಕ್ಯಾಂಪಸ್ ಅಭಿವೃದ್ಧಿ;

(vi) ಪ್ರಾರಂಭದ ದಿನಾಂಕದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಗಾಗಿ ಬಂಡವಾಳ ವೆಚ್ಚದ ಹಂತಗಳು;

(vii) ಬಾಬುವಾರು ಆವರ್ತಕ ವೆಚ್ಚ, ಆರ್ಥಿಕ ಮೂಲಗಳು ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ತಗಲುವ ಅಂದಾಜು ವೆಚ್ಚ;

(viii) ಸಂಪನ್ಮೂಲ ಸಂಗ್ರಹಣೆಗಾಗಿ ಯೋಜನೆ ಮತ್ತು ಅದಕ್ಕೆ ಬಂಡವಾಳದಿಂದ ತಗಲುವ ವೆಚ್ಚ ಹಾಗೂ ಪ್ರತಿಯೊಂದು ಮೂಲಕ್ಕೂ ಮರು ಸಂದಾಯ ಮಾಡುವ ರೀತಿ;

(ix) ವಿದ್ಯಾರ್ಥಿಗಳಿಂದ ಶುಲ್ಕ ವಸೂಲು ಮಾಡಿ ಆಂತರಿಕವಾಗಿ ನಿಧಿ ಸಂಗ್ರಹಿಸುವ ಯೋಜನೆ, ಸಲಹಾ ಸೇವೆ ಮತ್ತು ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಿಗೆ ಸಂಬಂಧಿಸಿದ ಇತರ ಚಟುವಟಿಕೆಗಳಿಂದ ನಿರೀಕ್ಷಿತ ವರಮಾನಗಳು ಮತ್ತು ಇತರ ನಿರೀಕ್ಷಿತ ವರಮಾನಗಳು;

(x) ಘಟಕವೊಂದಕ್ಕೆ ತಗಲುವ ವೆಚ್ಚದ ವಿವರಗಳು, ಆರ್ಥಿಕವಾಗಿ ದುರ್ಬಲವಾದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕ, ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿ ವೇತನದಲ್ಲಿ ನೀಡುವ ರಿಯಾಯಿತಿ ಅಥವಾ ವಿನಾಯತಿಯ ಪರಿಮಿತಿಯ ವಿವರಗಳನ್ನು ಮತ್ತು ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳಿಗೆ ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳು ಪ್ರಾಯೋಜಿಸಿದ ವಿದ್ಯಾರ್ಥಿಗಳಿಗೆ ಮತ್ತು ಭಾರತವನ್ನುಳಿದು ಇತರ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ವಿಧಿಸತಕ್ಕ ಶುಲ್ಕದ ದರಗಳು ಬೇರೆ ಬೇರೆ ಇದ್ದಲ್ಲಿ ಅವುಗಳನ್ನು ಸೂಚಿಸುವ ಶುಲ್ಕ ರಚನೆಯ ವಿವರಗಳು;

(xi) ಸಂಬಂಧಪಟ್ಟ ವಿದ್ಯಾ ವಿಭಾಗದಲ್ಲಿ ಎಷ್ಟು ವರ್ಷಗಳ ಅನುಭವ ಮತ್ತು ಪರಿಣಿತಿಯನ್ನು ಪ್ರಾಯೋಜಕ ನ್ಯಾಸವು ದೊರಕಿಸಿಕೊಡಲಿದೆ ಹಾಗೂ ಅದರ ಹಣಕಾಸಿನ ಸಂಪನ್ಮೂಲಗಳು;

(xii) ವಿಶ್ವವಿದ್ಯಾಲಯದಲ್ಲಿರುವ ಅಧ್ಯಯನ ಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕಾಗಿ ಇರುವ ವ್ಯವಸ್ಥೆ;

(xiii) ವಿಶ್ವವಿದ್ಯಾಲಯವು ಸ್ಥಾಪನೆಯಾಗುವುದಕ್ಕೆ ಮೊದಲು ನೆರವೇರಿಸಬೇಕೆಂದು ರಾಜ್ಯ ಸರ್ಕಾರವು ಅಗತ್ಯಪಡಿಸಬಹುದಾದ ಅಂಥ ಇತರ ಷರತ್ತುಗಳ ನೆರವೇರಿಕೆಯ ಹಂತ.

(4) ಪ್ರಾಯೋಜಕ ನ್ಯಾಸದಿಂದ ಸ್ವೀಕರಿಸಿದ ಪ್ರಸ್ತಾವಗಳನ್ನು ಪರೀಕ್ಷಿಸಲು ರಾಜ್ಯ ಸರ್ಕಾರವು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಪದನಿಮಿತ್ತ ಸದಸ್ಯರಾದ ಮೂರು ಸದಸ್ಯರುಗಳನ್ನು ಒಳಗೊಂಡ ಒಂದು ಶೋಧನಾ ಸಮಿತಿಯನ್ನು ರಚಿಸತಕ್ಕದ್ದು ಮತ್ತು ಅದು ವಿಶ್ವವಿದ್ಯಾಲಯದ ಸ್ಥಾಪನೆಗೆ ರಾಜ್ಯ ಸರ್ಕಾರಕ್ಕೆ ಶಿಫಾರಸ್ಸನ್ನು ಮಾಡತಕ್ಕದ್ದು.

**4. ವಿಶ್ವವಿದ್ಯಾಲಯದ ಸ್ಥಾಪನೆ.–** (1) ರಾಜ್ಯ ಸರ್ಕಾರವು ಶೋಧನಾ ಸಮಿತಿಯು ಮಾಡಿದ ಶಿಫಾರಸ್ಸುಗಳನ್ನು ಪರಿಶೀಲಿಸಿದ ತರುವಾಯ ಮತ್ತು ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ,–

(i) ನ್ಯಾಸವು ಸಾಕಷ್ಟು ಮೂಲ ಸೌಕರ್ಯದೊಂದಿಗೆ ವಿಶ್ವವಿದ್ಯಾಲಯವೊಂದನ್ನು ನಡೆಸಲು ಸಮರ್ಥವಾಗಿದೆ ಎಂದು ಅದು ಮನಗಂಡರೆ;

(ii) ಪ್ರದೇಶಕ್ಕನುಸಾರವಾಗಿ ಕೆಳಗೆ ನಿರ್ದಿಷ್ಟ ಪಡಿಸಿದ ವ್ಯಾಪ್ತಿಗೆ ಭೂಮಿಯ ಒಡೆತನವನ್ನು ಹೊಂದಿರತಕ್ಕದ್ದು, ಎಂದರೆ:–

(ಎ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯೊಳಗಿದ್ದರೆ ಇಪ್ಪತ್ತೈದು ಎಕರೆಗಳು;

(ಬಿ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯಿಂದ ಹೊರಗೆ ಇದ್ದು, ಆದರೆ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಪ್ರದೇಶದ ಒಳಗೆ ಇದ್ದರೆ ನಲವತ್ತು ಎಕರೆಗಳು;

(ಸಿ) ಭೂಮಿಯು (ಎ) ಮತ್ತು (ಬಿ) ಖಂಡಗಳಲ್ಲಿ ನಿರ್ದಿಷ್ಟಪಡಿಸಿದ ಸ್ಥಳಗಳನ್ನು ಹೊರತುಪಡಿಸಿದ್ದರೆ ಅರವತ್ತು ಎಕರೆಗಳಿಗಿಂತ ಕಡಿಮೆ ಇರತಕ್ಕದ್ದಲ್ಲ.

ಮೇಲೆ ನಿರ್ದಿಷ್ಟಪಡಿಸಿದ ಭೂಮಿಯು ಏಕ ಘಟಕ (ಸಿಂಗಲ್ ಬ್ಲಾಕ್) ದಲ್ಲಿರತಕ್ಕದ್ದು ಮತ್ತು ಇದು ಸಂಬಂಧಪಟ್ಟ ನ್ಯಾಸ/ ಪ್ರತಿಷ್ಠಾನ/ಸಂಸ್ಥೆ/ವಿಶ್ವವಿದ್ಯಾಲಯದ ಹೆಸರಿನಲ್ಲಿರತಕ್ಕದ್ದು. 3ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ಅಗತ್ಯಪಡಿಸಲಾದಂತೆ

ಒದಗಿಸಿದ ವಿವರಗಳ ಆಧಾರದ ಮೇಲೆ ಸರ್ಕಾರವು 47ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಬೇಕೆಂದು ನ್ಯಾಸಕ್ಕೆ ನಿರ್ದೇಶನ ನೀಡಬಹುದು.

(2) ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಸ್ಥಾಪನೆಯ ತರುವಾಯ, ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, "ವೈದೇಹಿ ವಿಶ್ವವಿದ್ಯಾಲಯ" ಎಂಬ ಹೆಸರಿನ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ರಾಜ್ಯದಲ್ಲಿ ಸ್ಥಾಪಿಸುವುದಕ್ಕೆ ಮಂಜೂರಾತಿಯನ್ನು ನೀಡಬಹುದು.

(3) ವಿಶ್ವವಿದ್ಯಾಲಯದ ಕೇಂದ್ರ ಕಾರ್ಯಸ್ಥಾನವು ಬೆಂಗಳೂರಿನಲ್ಲಿ ಇರತಕ್ಕದ್ದು. ವಿಶ್ವವಿದ್ಯಾಲಯವು ತನ್ನ ಕ್ಯಾಂಪಸ್ಸುಗಳನ್ನು ಅಥವಾ ಪ್ರಾದೇಶಿಕ ಕೇಂದ್ರಗಳನ್ನು, ಅಧ್ಯಯನ ಕೇಂದ್ರಗಳನ್ನು ಕರ್ನಾಟಕದ ಯಾವುದೇ ಭಾಗದಲ್ಲಿ ಹೊಂದಿರತಕ್ಕದ್ದು ಮತ್ತು ಆ ಬಗ್ಗೆ ರಾಜ್ಯ ಸರ್ಕಾರದ ಪೂರ್ವಾನುಮತಿಯನ್ನು ಪಡೆದುಕೊಳ್ಳುವುದಕ್ಕೊಳಪಟ್ಟು ಹಾಗೂ ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗನುಸಾರವಾಗಿ ಹೊಂದಿರತಕ್ಕದ್ದು.

(4) ಮೊದಲ ಕುಲಾಧಿಪತಿಯವರು, ಮೊದಲ ಕುಲಪತಿಯವರು, ಪ್ರಬಂಧಕ ಮಂಡಳಿಯ ಮೊದಲ ಸದಸ್ಯರುಗಳು, ವ್ಯವಸ್ಥಾಪನಾ ಮಂಡಳಿಯ ಹಾಗೂ ಶೈಕ್ಷಣಿಕ ಪರಿಷತ್ತಿನ ಮೊದಲ ಸದಸ್ಯರುಗಳು ಮತ್ತು ಇನ್ನು ಮುಂದೆ, ಅಂಥ ಅಧಿಕಾರಿಗಳು ಅಥವಾ ಸದಸ್ಯರುಗಳಾಗಬಹುದಾದಂಥ ಎಲ್ಲಾ ವ್ಯಕ್ತಿಗಳು, ಅಂಥ ಪದ ಅಥವಾ ಸದಸ್ಯತ್ವವನ್ನು ಹೊಂದಿರುವುದು ಮುಂದುವರೆಯುವವರೆಗೆ, ಒಂದು ನಿಗಮಿತ ನಿಕಾಯವನ್ನು ರಚಿಸತಕ್ಕದ್ದು. ಮತ್ತು ಅದು ವಿಶ್ವವಿದ್ಯಾಲಯದ ಹೆಸರಿನಲ್ಲಿ ದಾವೆ ಹೂಡಬಹುದು ಮತ್ತು ದಾವೆಗೊಳಗಾಗಬಹುದು.

(5) (2)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯವು ಸ್ಥಾಪನೆಗೆ ಮಂಜೂರಾತಿಯಾದ ಮೇಲೆ, ವಿಶ್ವವಿದ್ಯಾಲಯದ ಉದ್ದೇಶಕ್ಕಾಗಿ, ಪ್ರಾಯೋಜಕ ನ್ಯಾಸವು ಆರ್ಜಿಸಿದ, ಸೃಜಿಸಿದ, ಏರ್ಪಾಟು ಮಾಡಿಕೊಂಡ ಅಥವಾ ಕಟ್ಟಲ್ಪಟ್ಟ ಭೂಮಿ ಮತ್ತು ಇತರ ಸ್ಥಿರ ಮತ್ತು ಚರ ಸ್ವತ್ತು, ವಿಶ್ವವಿದ್ಯಾಲಯದಲ್ಲಿ ನಿಹಿತವಾಗಿರತಕ್ಕದ್ದು.

(6) ವಿಶ್ವವಿದ್ಯಾಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದ ಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂಥ ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

(7) ವಿಶ್ವವಿದ್ಯಾಲಯದಲ್ಲಿನ ಭೂಮಿ, ಕಟ್ಟಡ ಮತ್ತು ಇತರ ಸ್ವತ್ತುಗಳನ್ನು ವಿಶ್ವವಿದ್ಯಾಲಯದ ಉದ್ದೇಶಗಳಿಗೆ ಆನುಷಂಗಿಕವಾಗಿರುವುದನ್ನು ಹೊರತುಪಡಿಸಿ ಇತರ ಯಾವುದೇ ಉದ್ದೇಶಕ್ಕಾಗಿ ಬಳಸತಕ್ಕದ್ದಲ್ಲ.

**5. ಅನುದಾನಗಳು ಮತ್ತು ಹಣಕಾಸು ನೆರವು.–** ವಿಶ್ವವಿದ್ಯಾಲಯವು ಸ್ವಂತ ಧನಮೂಲ ಉಳ್ಳದ್ದಾಗಿರತಕ್ಕದ್ದು ಮತ್ತು ರಾಜ್ಯದಿಂದ ಅಥವಾ ರಾಜ್ಯದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಇತರ ಸಂಸ್ಥೆ ಅಥವಾ ನಿಗಮದಿಂದ ಯಾವುದೇ ನಿರ್ವಹಣಾ ಸಹಾಯ ಅನುದಾನ ಅಥವಾ ಯಾವುದೇ ಹಣಕಾಸು ನೆರವನ್ನು ಹಕ್ಕಿನಿಂದ ಕೇಳತಕ್ಕದ್ದಲ್ಲ ಅಥವಾ ಅದನ್ನು ಪಡೆಯಲು ಹಕ್ಕನ್ನು ಹೊಂದಿರತಕ್ಕದ್ದಲ್ಲ:

ಪರಂತು, ರಾಜ್ಯವು,–

(ಎ) ಇತರ ರಾಜ್ಯ ಸರ್ಕಾರದ ಸಂಘಟನೆಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿರುವಂಥದ್ದೇ ಸಂಶೋಧನೆ, ಅಭಿವೃದ್ಧಿ ಮತ್ತಿತರ ಚಟುವಟಿಕೆಗಳಿಗಾಗಿ; ಅಥವಾ

(ಬಿ) ರಾಜ್ಯ ಸರ್ಕಾರದಿಂದ ನೆರವನ್ನು ಪಡೆಯುವ ಯಾವುದೇ ನಿರ್ದಿಷ್ಟ ಸಂಶೋಧನೆ ಅಥವಾ ಕಾರ್ಯಕ್ರಮಗಳಿಗಾಗಿ; ಮತ್ತು

(ಸಿ) ರಾಜ್ಯ ಕಾರ್ಯನೀತಿಯ ಬದಲಾವಣೆಗೆ ಒಳಪಟ್ಟು ಅಥವಾ ಅನ್ಯಥಾ ಇದೇ ಬಗೆಯ ವಿಶ್ವವಿದ್ಯಾಲಯಗಳಿಗೆ ಅವಕಾಶವನ್ನು ಕಲ್ಪಿಸುವುದಕ್ಕೆ ಅಥವಾ ಅವುಗಳ ಪ್ರಯೋಜನಕ್ಕಾಗಿ,

– ಅನುದಾನದ ಮೂಲಕ ಅಥವಾ ಅನ್ಯಥಾ ಹಣಕಾಸು ಬೆಂಬಲವನ್ನು ಒದಗಿಸಬಹುದು:

ಮತ್ತು ಪರಂತು, ವಿಶ್ವವಿದ್ಯಾಲಯವು, ಯಾವುದೇ ಇತರ ಮೂಲದಿಂದ ಯಾವುದೇ ಆರ್ಥಿಕ ನೆರವನ್ನು ಸ್ವೀಕರಿಸಬಹುದು.

**6. ಘಟಕ ಕಾಲೇಜು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಅಥವಾ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದಕ್ಕೆ ಅಧಿಕಾರ.–** ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಐದು ವರ್ಷಗಳನ್ನು ಪೂರ್ಣಗೊಳಿಸಿದ ನಂತರ, ವಿಶ್ವವಿದ್ಯಾಲಯ ಅನುದಾನ ಆಯೋಗದ ಮತ್ತು ಇತರ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ಗುಣಮಟ್ಟಗಳಿಗೆ ಒಳಪಟ್ಟು, ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ, ವಿಶ್ವವಿದ್ಯಾಲಯವು, ರಾಜ್ಯದಲ್ಲಿ ತನಗೆ ಸೂಕ್ತವೆನಿಸುವಂಥ ಸ್ಥಳಗಳಲ್ಲಿ ಘಟಕ ಕಾಲೇಜುಗಳು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದಿರಬಹುದು.

7. **ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು.–** ವಿಶ್ವವಿದ್ಯಾಲಯವು, ತನ್ನ ಭವಿಷ್ಯದ್‌ದೃಷ್ಟಿ ಮತ್ತು ಧ್ಯೇಯೋದ್ದೇಶಗಳನ್ನು ಸಾಧಿಸಲು ಈ ಮುಂದಿನಂತೆ ವಿವಿಧ ಬಗೆಯ ಕಾರ್ಯತಂತ್ರಗಳನ್ನು ಕೈಗೊಳ್ಳಬಹುದು:–

(i) ವೈದ್ಯಕೀಯ, ದಂತ ವೈದ್ಯಕೀಯ, ಔಷಧ ವಿಜ್ಞಾನ, ಫಿಸಿಯೋಥೆರಪಿ, ನರ್ಸಿಂಗ್, ಸಂಬಂಧಿತ ಆರೋಗ್ಯ ವಲಯಗಳು, ಜೀವ ವಿಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ಸಂಬಂಧಿತ ವಲಯಗಳಲ್ಲಿ ಸ್ನಾತಕೋತ್ತರ, ಡಾಕ್ಟೊರಲ್ ಮತ್ತು ಪೋಸ್ಟ್ ಡಾಕ್ಟೊರಲ್ ಕೋರ್ಸುಗಳಿಗೆ ಮುಂದುವರಿಯುವ ಮತ್ತು ಅವುಗಳನ್ನು ಒಳಗೊಳ್ಳುವ ವಿಶ್ವವಿದ್ಯಾಲಯ ಶಿಕ್ಷಣದಲ್ಲಿ ಪ್ರಗತಿಯನ್ನು ಮತ್ತು ಅನ್ವೇಷಣೆಯನ್ನು ಬೆಂಬಲಿಸುವುದು, ಪ್ರೋತ್ಸಾಹಿಸುವುದು ಮತ್ತು ಕೈಗೊಳ್ಳುವುದು ಹಾಗೂ ಈ ಕ್ಷೇತ್ರಗಳಲ್ಲಿ ಸಲಹೆಯನ್ನೂ ಒಳಗೊಂಡಂತೆ ಸಂಶೋಧನೆ, ಪ್ರಗತಿ ಮತ್ತು ಪ್ರಸಾರಕ್ಕೆ ಅವಕಾಶವನ್ನು ಕಲ್ಪಿಸುವುದು;

(ii) ವಿದ್ಯಾರ್ಥಿಗಳಿಗೆ, ಬೋಧಕ ವೃಂದದ (ಫ್ಯಾಕಲ್ಟಿ) ಸದಸ್ಯರಿಗೆ ಮತ್ತು ಇತರರಿಗೆ ನಿರ್ದಿಷ್ಟ ಶೈಕ್ಷಣಿಕ ಮತ್ತು ಸಂಶೋಧನಾ ಕಾರ್ಯಕ್ರಮಗಳನ್ನು, ತರಬೇತಿ ಕಾರ್ಯಕ್ರಮಗಳನ್ನು ಮತ್ತು ವಿನಿಮಯ ಕಾರ್ಯಕ್ರಮಗಳನ್ನು ಪರಿಕಲ್ಪಿಸಲು, ವಿನ್ಯಾಸಗೊಳಿಸಲು, ಅಭಿವೃದ್ಧಿಪಡಿಸಲು ಇತರ ಯಾವುದೇ ವಿಶ್ವವಿದ್ಯಾಲಯಗಳು, ಸಂಶೋಧನಾ ಸಂಸ್ಥೆಗಳು, ಲಾಭರಹಿತ ಸಂಸ್ಥೆಗಳು, ಕೈಗಾರಿಕಾ ಸಂಸ್ಥೆಗಳು, ವೃತ್ತಿಪರ ಸಂಸ್ಥೆಗಳು ಅಥವಾ ಇತರ ಸಂಸ್ಥೆಗಳೊಂದಿಗೆ ಸಹಯೋಗವನ್ನು ಹೊಂದುವುದು;

(iii) ರಾಜ್ಯ ಸರ್ಕಾರದ ಪೂರ್ವ ಅನುಮೋದನೆಯೊಡನೆ, ಯಾವುದೇ ಸಂಸ್ಥೆಯೊಂದಿಗೆ ಸಹಯೋಗ ಹೊಂದಿ ಸಂಶೋಧನೆಯನ್ನು ಮತ್ತು ಹೊಸತನವನ್ನು ಬೆಳಕಿಗೆ ತರುವುದು;

(iv) ತಾನು ಸೂಕ್ತವೆಂದು ಭಾವಿಸಬಹುದಾದಂತೆ, ಕಲಿಕೆಯ ಅಂಥ ಶಾಖೆಗಳಲ್ಲಿ ಬೋಧನಾ ಮತ್ತು ಸಂಶೋಧನಾ ಸೌಲಭ್ಯಗಳನ್ನು ಒದಗಿಸಿ ಜ್ಞಾನ ಪ್ರಸಾರ ಮಾಡುವುದು ಮತ್ತು ಅದನ್ನು ಮುಂದುವರೆಸುವುದು ಹಾಗೂ ವಿಶೇಷವಾಗಿ ವೈದ್ಯಕೀಯ, ದಂತ ವೈದ್ಯಕೀಯ, ಔಷಧ ವಿಜ್ಞಾನ, ಫಿಸಿಯೋಥೆರಪಿ, ನರ್ಸಿಂಗ್, ಸಂಬಂಧಿತ ಆರೋಗ್ಯ ವಲಯಗಳು, ಜೀವ ವಿಜ್ಞಾನ, ಜೈವಿಕ ತಂತ್ರಜ್ಞಾನ ಇವುಗಳನ್ನು ಒಳಗೊಂಡ ಆರೋಗ್ಯ ಸಂರಕ್ಷಣೆ ಶಿಕ್ಷಣ ಮತ್ತು ಸಂಬಂಧಿತ ಕೋರ್ಸುಗಳಲ್ಲಿ ಸಮಗ್ರ ವ್ಯಾಸಂಗ ವಿಷಯಗಳಿಗಾಗಿ ವಿಶೇಷ ಉಪಬಂಧ ಕಲ್ಪಿಸುವುದು ಮತ್ತು ವಿಶ್ವವಿದ್ಯಾಲಯದಲ್ಲಿ ಅಂತರವಿದ್ಯಾವಿಷಯಗಳ ಅಧ್ಯಯನ ಮತ್ತು ಸಂಶೋಧನೆಗೆ ಉತ್ತೇಜನ ನೀಡುವುದಕ್ಕಾಗಿ ಸೂಕ್ತ ಕ್ರಮ ಕೈಗೊಳ್ಳುವುದು;

(v) ಉನ್ನತ ಕಲಿಕೆಗೆ ಪ್ರವೇಶಾವಕಾಶಗಳನ್ನು ಮತ್ತು ನ್ಯಾಯಸಮ್ಮತತೆಗೆ ಉತ್ತೇಜನ ನೀಡುವ ದೃಷ್ಟಿಯಿಂದ, ಕಲಿಕೆಯ ವಿಧಾನಗಳು ಮತ್ತು ಸ್ಥಳಗಳು, ವ್ಯಾಸಂಗ ಕ್ರಮಗಳ ಸಂಯೋಜನೆ, ದಾಖಲಾತಿಗಾಗಿ ಅರ್ಹತೆ, ಪ್ರವೇಶದ ವಯಸ್ಸು, ಪರೀಕ್ಷೆಯನ್ನು ನಡೆಸುವುದು ಮತ್ತು ಕಾರ್ಯಕ್ರಮಗಳ ನಿರ್ವಹಣೆಗೆ ಸಂಬಂಧಿಸಿದಂತೆ ನಮ್ಯವಾದ (ಫ್ಲೆಕ್ಸಿಬಲ್) ಮತ್ತು ಮುಕ್ತವಾದ, ವಿಶ್ವವಿದ್ಯಾಲಯ ಮಟ್ಟದ ಶಿಕ್ಷಣದ ಅನ್ವೇಷಣಾ ಪದ್ಧತಿಯನ್ನು ಅಳವಡಿಸುವುದು ಹಾಗೂ ಜ್ಞಾನದ ಹೊಸ ಕ್ಷೇತ್ರಗಳಲ್ಲಿ ಉತ್ಕೃಷ್ಟತೆಗೆ ಪ್ರೋತ್ಸಾಹಿಸುವುದು, ಶೈಕ್ಷಣಿಕ ಮತ್ತು ಸಮನ್ವಯ ಕಲಿಕೆ, ಇವೆರಡಕ್ಕೂ ಸಮನಾದ ಪ್ರಾಮುಖ್ಯತೆಯನ್ನು ನೀಡುವುದು;

(vi) ಗುಣಮಟ್ಟದ ಶಿಕ್ಷಣಕ್ಕಾಗಿ ಕೊಡುಗೆಯನ್ನು ನೀಡಲು ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಸಂಪನ್ಮೂಲ ಕೇಂದ್ರಗಳನ್ನು ಅಭಿವೃದ್ಧಿಪಡಿಸುವುದು;

(vii) ಕರ್ನಾಟಕದಲ್ಲಿ ವಿವಿಧ ಸ್ಥಳಗಳಲ್ಲಿ ಕ್ಯಾಂಪಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳು ಮತ್ತು ಸಂಯೋಜಿತ ಕಾಲೇಜುಗಳನ್ನು ಸ್ಥಾಪಿಸುವುದು ಮತ್ತು ತಾಂತ್ರಿಕತೆ, ವೃತ್ತಿಪರತೆ, ಸಾಮಾನ್ಯ ಶಿಕ್ಷಣ ಮತ್ತು ಸಮಾಜ ಮತ್ತು ಮಾನವ ಅಭಿವೃದ್ಧಿಯಲ್ಲಿ ಶೈಕ್ಷಣಿಕ ಬದಲಾವಣೆಗೆ ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಕೊಡುಗೆ ನೀಡುವುದು ಮತ್ತು ಜ್ಞಾನವನ್ನು ಅಭಿವೃದ್ಧಿಪಡಿಸುವುದು;

(viii) ಮೌಲ್ಯಮಾಪನದ ವಿವಿಧ ಆಧುನಿಕ ವಿಧಾನಗಳ ಮೂಲಕ ಮಾಡಿದ ಮೌಲ್ಯಮಾಪನಕ್ಕೆ ಅನುಸಾರವಾಗಿ ಶಿಕ್ಷಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದುದರ ಆಧಾರದ ಮೇಲೆ ನೀಡಲು ಪದವಿಗಳನ್ನು, ಡಿಪ್ಲೋಮೋಗಳನ್ನು, ಪ್ರಮಾಣಪತ್ರಗಳನ್ನು ಮತ್ತು ಯಶೋಪತ್ರ ಪ್ರದಾನದಂಥ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(ix) ಉಪನ್ಯಾಸ ಮಾಲಿಕೆಗಳು, ವಿಚಾರ ಸಂಕಿರಣಗಳು, ಸಮ್ಮೇಳನಗಳು, ಕಾರ್ಯಾಂಗ ಶಿಕ್ಷಣ ಕಾರ್ಯಕ್ರಮಗಳು, ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳು, ಪ್ರಕಟಣೆಗಳು ಮತ್ತು ತರಬೇತಿ ಕಾರ್ಯಕ್ರಮಗಳು ಮತ್ತು ಕಾರ್ಯಸೂಚಿಗಳ ಮೂಲಕ ಜ್ಞಾನ ಪ್ರಸಾರ ಮಾಡುವುದು ಮತ್ತು ಶಿಕ್ಷಣ

ಮತ್ತು ತತ್ಸಂಬಂಧಿತ ಅಭಿವೃದ್ಧಿ ಕ್ಷೇತ್ರಗಳ ವಿಷಯಗಳ ಬಗ್ಗೆ ಸಾರ್ವಜನಿಕ ಚರ್ಚೆಯನ್ನು ಏರ್ಪಡಿಸುವುದು;

(x) ರಾಜ್ಯ ಸರ್ಕಾರದ ಪೂರ್ವ ಅನುಮತಿಯೊಂದಿಗೆ, ಉತ್ತಮ ಗುಣಮಟ್ಟದ ಇತರ ಯಾವುವೇ ವಿಶ್ವವಿದ್ಯಾಲಯಗಳೊಂದಿಗೆ ಸಹಭಾಗಿಗಳಾಗಿ ವಿಶ್ವವಿದ್ಯಾಲಯದ ಬೋಧಕ ವೃಂದ (ಫ್ಯಾಕಲ್ಟಿ) ಮತ್ತು ಸಂಶೋಧಕರ ಅಭಿವೃದ್ಧಿ ಮತ್ತು ತರಬೇತಿಗಾಗಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು;

(xi) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದಕ್ಕಾಗಿ ಮತ್ತು ಉತ್ತೇಜಿಸುವುದಕ್ಕಾಗಿ ಅವಶ್ಯಕವಾದ ಮತ್ತು ಯುಕ್ತವಾದ ಕ್ರಮಗಳನ್ನು ಕೈಗೊಳ್ಳುವುದು;

(xii) ಭಾರತದಲ್ಲಿ ಶಿಕ್ಷಣ ಮತ್ತು ಇತರ ಅಭಿವೃದ್ಧಿ ವಲಯಗಳನ್ನು ವಿಸ್ತರಿಸುವುದಕ್ಕಾಗಿ ಸರ್ಕಾರವು ಅನುಮೋದಿಸಬಹುದಾದಂತೆ ಯಾವುವೇ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದು.

**8. ವಿಶ್ವವಿದ್ಯಾಲಯದ ಅಧಿಕಾರಗಳು.**- ವಿಶ್ವವಿದ್ಯಾಲಯವು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗೆ ಅನುಸಾರವಾಗಿ ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿರ್ಧರಿಸಬಹುದಾದಂತೆ ಕ್ಯಾಂಪಸ್ಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಕರ್ನಾಟಕದಲ್ಲಿ ಸ್ಥಾಪಿಸುವುದು ಮತ್ತು ನಿರ್ವಹಿಸುವುದು;

(ii) ವಿಶ್ವವಿದ್ಯಾಲಯದ ಉದ್ದೇಶವನ್ನು ಕಾರ್ಯರೂಪಕ್ಕೆ ತರುವಲ್ಲಿ ಅಗತ್ಯವಾಗಬಹುದಾದ ಅಥವಾ ಕಾರ್ಯಸಾಧ್ಯವಾಗಬಹುದಾದ ಎಲ್ಲಾ ಅಂಥ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು;

(iii) ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಮತ್ತು ಷರತ್ತುಗಳಿಗೊಳಪಟ್ಟು ಪದವಿಗಳು ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರದಾನಮಾಡುವುದು;

(iv) ಪರಿನಿಯಮಗಳನ್ವಯ ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿ ವೇತನಗಳು ಮತ್ತು ಬಹುಮಾನಗಳು, ಅವಾರ್ಡುಗಳು, ಪಾರಿತೋಷಕಗಳು ಇತ್ಯಾದಿಗಳನ್ನು ಸ್ಥಾಪಿಸುವುದು ಮತ್ತು ನೀಡುವುದು;

(v) ಪರಿನಿಯಮಗಳಲ್ಲಿ ಅಥವಾ ಸಂದರ್ಭಾನುಸಾರವಾಗಿ ನಿಯಮಗಳಲ್ಲಿ ನಿಗದಿಪಡಿಸಬಹುದಾದ ಅಂಥ ಶುಲ್ಕಗಳು, ಬಿಲ್ಲುಗಳು, ಖರೀದಿ ಪಟ್ಟಿಗಳನ್ನು ಕೇಳಿಪಡೆದುಕೊಳ್ಳುವುದು ಮತ್ತು ಸ್ವೀಕರಿಸುವುದು ಹಾಗೂ ಚಾರ್ಜುಗಳನ್ನು ವಸೂಲು ಮಾಡುವುದು;

(vi) ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಪಠ್ಯೇತರ ಚಟುವಟಿಕೆಗಳಿಗೆ ಅವಕಾಶಗಳನ್ನು ಕಲ್ಪಿಸುವುದು;

(vii) ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಕ್ಯಾಂಪಸುಗಳ, ಪ್ರಾದೇಶಿಕ ಕೇಂದ್ರಗಳ, ಅಧ್ಯಯನ ಕೇಂದ್ರಗಳ ಫ್ಯಾಕಲ್ಟಿ, ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವುದು;

(viii) ವಿಶ್ವವಿದ್ಯಾಲಯದ ಅಥವಾ ಒಂದು ಘಟಕ ಕಾಲೇಜಿನ ಅಥವಾ ಕ್ಯಾಂಪಸ್ಸಿನ, ಪ್ರಾದೇಶಿಕ ಕೇಂದ್ರದ, ಅಧ್ಯಯನ ಕೇಂದ್ರದ ಉದ್ದೇಶಕ್ಕಾಗಿ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದಿರುವ, ಯಾವುದೇ ರೀತಿಯ ಸ್ವಯಂ ದೇಣಿಗೆಗಳು ಮತ್ತು ಕೊಡುಗೆಗಳನ್ನು ಸ್ವೀಕರಿಸುವುದು ಮತ್ತು ನ್ಯಾಸ ಮತ್ತು ದತ್ತಿ ಸ್ವತ್ತುಗಳೂ ಸೇರಿದಂತೆ, ಯಾವುದೇ ಚರ ಅಥವಾ ಸ್ಥಿರ ಸ್ವತ್ತನ್ನು ಆರ್ಜಿಸುವುದು, ಹೊಂದಿರುವುದು, ನಿರ್ವಹಿಸುವುದು, ನಡೆಸುವುದು ಮತ್ತು ಹಸ್ತಾಂತರ ಮಾಡುವುದು;

(ix) ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸಿಕೊಂಡು ಬರುವುದು ಹಾಗೂ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ ವಿದ್ಯಾರ್ಥಿಗಳಿಗೆ ವಸತಿ ಸ್ಥಳಗಳಾಗಿ ಮಾನ್ಯತೆ ನೀಡುವುದು;

(x) ವಸತಿಯ ಮೇಲ್ವಿಚಾರಣೆ ಮಾಡುವುದು ಮತ್ತು ನಿಯಂತ್ರಣ ಮಾಡುವುದು ಹಾಗೂ ವಿದ್ಯಾರ್ಥಿಗಳು ಮತ್ತು ಎಲ್ಲಾ ಪ್ರವರ್ಗಗಳ ಸಿಬ್ಬಂದಿಗಳಲ್ಲಿ ಶಿಸ್ತು ನಿಯಂತ್ರಣ ಮಾಡುವುದು ಮತ್ತು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ನಡತೆ ಸಂಹಿತೆಯನ್ನು ರೂಪಿಸುವುದೂ ಒಳಗೊಂಡಂತೆ, ಅಂಥ ಸಿಬ್ಬಂದಿಗಳ ಸೇವಾಷರತ್ತುಗಳನ್ನು ನಿರೂಪಿಸುವುದು;

(xi) ಶೈಕ್ಷಣಿಕ, ಆಡಳಿತಾತ್ಮಕ ಮತ್ತು ಬೆಂಬಲ ಸಿಬ್ಬಂದಿಯ ಹುದ್ದೆಗಳನ್ನು ಮತ್ತು ಇತರ ಅವಶ್ಯ ಹುದ್ದೆಗಳನ್ನು ಸೃಜಿಸುವುದು;

(xii) ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ಉದ್ದೇಶಗಳಿಗಾಗಿ ಇತರ ವಿಶ್ವವಿದ್ಯಾಲಯಗಳೊಡನೆ ಸಹಕರಿಸುವುದು ಮತ್ತು ಸಹಯೋಗ ಹೊಂದುವುದು;

(xiii) ಶಿಕ್ಷಕರಿಗೆ, ಪಾಠಗಳನ್ನು ರಚಿಸುವವರಿಗೆ, ಮೌಲ್ಯಮಾಪಕರಿಗೆ ಮತ್ತಿತರ ಶೈಕ್ಷಣಿಕ ಸಿಬ್ಬಂದಿಗೆ ಪುನರ್ಮನನ ವ್ಯಾಸಂಗಕ್ರಮಗಳು, ಅಭಿಮುಖ ವ್ಯಾಸಂಗ ಕ್ರಮಗಳು, ಕಾರ್ಯಾಗಾರಗಳು, ವಿಚಾರಗೋಷ್ಠಿಗಳು ಮತ್ತಿತರ ಕಾರ್ಯಕ್ರಮಗಳನ್ನು ಏರ್ಪಡಿಸುವುದು ಮತ್ತು ನಡೆಸುವುದು;

(xiv) ಶೈಕ್ಷಣಿಕ ಪರಿಷತ್ತಿನ ಅನುಮೋದನೆಯೊಂದಿಗೆ ವಿಶ್ವವಿದ್ಯಾಲಯಕ್ಕೆ ಅಥವಾ ಘಟಕ ಕಾಲೇಜಿಗೆ, ಪ್ರಾದೇಶಿಕ ಕೇಂದ್ರಗಳಿಗೆ, ಅಧ್ಯಯನ ಕೇಂದ್ರಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮತ್ತು ಈ ಅಧಿನಿಯಮದಲ್ಲಿ ಕಲ್ಪಿಸಿದ ವ್ಯಾಪ್ತಿಗಿಂತ ಕಡಿಮೆಯಿಲ್ಲದಂತೆ ಕರ್ನಾಟಕದ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮಾನಕ ಗುಣಮಟ್ಟಗಳನ್ನು ನಿರ್ಧರಿಸುವುದು;

(xv) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಕಾರ್ಯರೂಪಕ್ಕೆ ತರಲು ಅವಶ್ಯವಾಗಬಹುದಾದಂಥ ಇತರ ಎಲ್ಲಾ ಕ್ರಮಗಳನ್ನು ಅಥವಾ ಕಾರ್ಯಗಳನ್ನು, ಅವು ಮೇಲೆ ಹೇಳಿದ ಅಧಿಕಾರಗಳಿಗೆ ಪ್ರಾಸಂಗಿಕವಾಗಿರಲಿ ಅಥವಾ ಇಲ್ಲದಿರಲಿ, ಕೈಗೊಳ್ಳುವುದು;

(xvi) ಪರೀಕ್ಷೆಗಳ ಆಧಾರದ ಮೇಲೆ ಅಥವಾ ಸರ್ಕಾರದಿಂದ ಅನುಮೋದಿತವಾದ ಇತರ ಯಾವುದೇ ಮೌಲ್ಯಮಾಪನ ವಿಧಾನದ ಆಧಾರದ ಮೇಲೆ ನೀಡಲು ಪದವಿಗಳು, ಡಿಪ್ಲೋಮಾಗಳು, ಪ್ರಮಾಣಪತ್ರಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಸ್ಥಾಪಿಸುವುದು;

(xvii) ಫಿಲಂಗಳು, ಕ್ಯಾಸೆಟ್‌ಗಳು, ಧ್ವನಿಸುರುಳಿಗಳು, ದೃಶ್ಯಸುರುಳಿಗಳು, ಸಿ.ಡಿ., ವಿ.ಸಿ.ಡಿ. ಮತ್ತು ಇತರ ತಂತ್ರಾಂಶಗಳೂ ಹಾಗೂ ಇತರ ಸಂಬಂಧಿತ ವಿದ್ಯುನ್ಮಾನ ಮತ್ತು ಮುದ್ರಣ ಮಾಧ್ಯಮ ಸೇರಿದಂತೆ ಬೋಧಕ ಸಾಮಗ್ರಿಗಳನ್ನು ತಯಾರಿಸುವುದಕ್ಕಾಗಿ ಅವಕಾಶ ಕಲ್ಪಿಸುವುದು;

(xviii) ಪ್ರಬಂಧಕ ಮಂಡಳಿಯ ಅನುಮೋದನೆಯೊಡನೆ ವಿಶ್ವವಿದ್ಯಾಲಯದ ಉದ್ದೇಶಗಳಿಗಾಗಿ ವಿಶ್ವವಿದ್ಯಾಲಯದ ಸ್ವತ್ತುಗಳನ್ನು ಭದ್ರತೆಯಾಗಿ ನೀಡಿ ಅಥವಾ ನೀಡದೆ ಹಣವನ್ನು ಪಡೆಯುವುದು, ಸಂಗ್ರಹಿಸುವುದು, ಚಂದಾದಾರರಾಗುವುದು ಮತ್ತು ಸಾಲ ಪಡೆಯುವುದು;

(xix) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುದೇ ಇತರ ಶೈಕ್ಷಣಿಕ ಸಂಸ್ಥೆಗಳ ಆಡಳಿತವನ್ನು ವಶಪಡಿಸಿಕೊಳ್ಳುವುದು, ವಹಿಸಿಕೊಳ್ಳುವುದು ಮತ್ತು ನಡೆಸುವುದು;

(xx) ಕಾರ್ಯಕಾರಿ ಪರಿಷತ್ತು ಪೂರ್ವಾನುಮೋದನೆಯೊಂದಿಗೆ ಸ್ವತ್ತುಗಳನ್ನು ಆರ್ಜಿಸುವುದು;

(xxi) ವಿಶ್ವವಿದ್ಯಾಲಯದ ಮೇಲಿನ ಉದ್ದೇಶಗಳಿಗೆ ಸಂಬಂಧಿಸಿದ ಅಥವಾ ಪ್ರಾಸಂಗಿಕವಾದ ಯಾವುದೇ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು.

**9. ವಿಶ್ವವಿದ್ಯಾಲಯವು ಎಲ್ಲಾ ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲರಿಗೂ ಮುಕ್ತವಾಗಿರತಕ್ಕದ್ದು.–** ವಿಶ್ವವಿದ್ಯಾಲಯದ ಪ್ರವೇಶಗಳು ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲಾ ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು. ಎಲ್ಲಾ ಪ್ರವೇಶಗಳನ್ನು ಅರ್ಹತಾ ಪರೀಕ್ಷೆಗಳಲ್ಲಿನ ಅರ್ಹತೆಯ ಆಧಾರದ ಮೇಲೆ ಮಾಡತಕ್ಕದ್ದು:

ಪರಂತು, ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳ ಪ್ರವೇಶದಲ್ಲಿ ಶೇಕಡಾ ನಲವತ್ತರಷ್ಟನ್ನು ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ಮೀಸಲಿಡತಕ್ಕದ್ದು ಮತ್ತು ಪ್ರವೇಶಗಳನ್ನು ರಾಜ್ಯ ಸರ್ಕಾರವು ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡತಕ್ಕದ್ದು ಮತ್ತು ಸೀಟುಗಳನ್ನು ಅರ್ಹತ ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ರೂಪಿಸುವ ಮೀಸಲಾತಿ ನೀತಿಗೆ ಅನುಸಾರವಾಗಿ ಹಂಚಿಕೆ ಮಾಡತಕ್ಕದ್ದು:

ಮತ್ತು ಪರಂತು, ಯಾವುದೇ ಕೋರ್ಸಿನಲ್ಲಿ ಹತ್ತಕ್ಕಿಂತ ಕಡಿಮೆ ಸೀಟುಗಳು ಇರುವಲ್ಲಿ, ಸ್ನಾತಕೋತ್ತರ ಇಂಥ ಕೋರ್ಸುಗಳನ್ನು ಒಟ್ಟಿಗೆ ಒಂದುಗೂಡಿಸುವ ಮೂಲಕ ಮೀಸಲಿಡತಕ್ಕದ್ದು ಮತ್ತು ಯಾವುದೇ ಕೋರ್ಸಿನಲ್ಲಿ ಮೂರು ಸೀಟುಗಳಿಗಿಂತ ಕಡಿಮೆ ಇರುವಲ್ಲಿ, ಅವುಗಳನ್ನು ಸರದಿ ಸುತ್ತಿನಲ್ಲಿ ಮೀಸಲಿಡತಕ್ಕದ್ದು.

**10. ರಾಷ್ಟ್ರೀಯ ಅಧಿಮಾನ್ಯತೆ.–** ವಿಶ್ವವಿದ್ಯಾಲಯವು ಪ್ರಾರಂಭವಾದ ತರುವಾಯ ಆದಷ್ಟು ಬೇಗನೆ ಸಂಬಂಧಪಟ್ಟ ಶಾಸನಾತ್ಮಕ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳಿಂದ ಅಧಿಮಾನ್ಯತೆಯನ್ನು ಕೋರತಕ್ಕದ್ದು ಮತ್ತು ಖಾಸಗಿ ವಿಶ್ವವಿದ್ಯಾಲಯಗಳು ನಡೆಸುವ ಎಲ್ಲಾ ವ್ಯಾಸಂಗ ಕ್ರಮಗಳು ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ವಿನಿಯಮಗಳಿಗೆ ಅನುಸಾರವಾಗಿ ಇರತಕ್ಕದ್ದು.

**11. ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು.–** ಪ್ರಾಯೋಜಕ ಸಂಸ್ಥೆಯು ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದಂತೆ ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಇವುಗಳಲ್ಲಿ ಪ್ರತಿಯೊಂದನ್ನು ಪ್ರಾಯೋಜಕ ಸಂಸ್ಥೆಯು ತನ್ನ ವಿವೇಚನಾನುಸಾರ ಚಲಾಯಿಸಬಹುದು, ಎಂದರೆ:–

(i) ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಪುನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(ii) ವಿಶ್ವವಿದ್ಯಾಲಯದ ಪ್ರಥಮ ಪ್ರಬಂಧಕ ಮಂಡಳಿಯನ್ನು ರಚಿಸುವುದು;

(iii) ಪ್ರಬಂಧಕ ಮಂಡಳಿಯ ಅಧ್ಯಕ್ಷರನ್ನು ನಾಮನಿರ್ದೇಶಿಸುವುದು;

(iv) ಪ್ರಬಂಧಕ ಮಂಡಳಿಯ ಸದಸ್ಯರಾಗಿ ಮೂರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(v) ಕಾರ್ಯಕಾರಿ ಪರಿಷತ್ತಿನ ಸದಸ್ಯರಾಗಿ ಇಬ್ಬರು ವ್ಯಕ್ತಿಗಳನ್ನು ನಾಮ ನಿರ್ದೇಶಿಸುವುದು;

(vi) ವಿಶ್ವವಿದ್ಯಾಲಯದ ದತ್ತಿ ನಿಧಿಗೆ ದೇಣಿಗೆ ನೀಡಲು ನಿಧಿ ಮೂಲಗಳನ್ನು ನಿರ್ಧರಿಸುವುದು;

(vii) ವಿಶ್ವವಿದ್ಯಾಲಯದ ಹಣದ ವಿನಿಯೋಗ ಮತ್ತು ವೆಚ್ಚ ಮಾಡುವುದನ್ನು ನಿರ್ಧರಿಸುವುದು;

(viii) ಈ ಅಧಿನಿಯಮದಲ್ಲಿ ಉಪಬಂಧಿಸಿರುವ ವಿಧಾನದಲ್ಲಿ ಪ್ರಬಂಧಕ ಮಂಡಳಿಯ ಸಭೆಯಲ್ಲಿಯ ವಿವಾದಗಳನ್ನು ಬಗೆಹರಿಸುವುದು.

## ಅಧ್ಯಾಯ – III
## ವಿಶ್ವವಿದ್ಯಾಲಯದ ಅಧಿಕಾರಿಗಳು

**12. ವಿಶ್ವವಿದ್ಯಾಲಯದ ಅಧಿಕಾರಿಗಳು.–** ಈ ಮುಂದಿನವರು ವಿಶ್ವವಿದ್ಯಾಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:–

(i) ಸಂದರ್ಶಕರು;

(ii) ಸಹ–ಸಂದರ್ಶಕರು;

(iii) ಕುಲಾಧಿಪತಿಗಳು;

(iv) ಕುಲಪತಿಗಳು;

(v) ಸಹಕುಲಪತಿಗಳು;

(vi) ಕುಲಸಚಿವರು;

(vii) ಹಣಕಾಸು ಅಧಿಕಾರಿ; ಮತ್ತು

(viii) ಪರಿನಿಯಮಗಳ ಮೂಲಕ ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಘೋಷಿಸಬಹುದಾದಂಥ ಇತರ ಅಧಿಕಾರಿಗಳು.

**13. ಸಂದರ್ಶಕರು.–** (1) ಕರ್ನಾಟಕದ ಘನತೆವೆತ್ತ ರಾಜ್ಯಪಾಲರು ವಿಶ್ವವಿದ್ಯಾಲಯದ ಸಂದರ್ಶಕರಾಗಿರತಕ್ಕದ್ದು ಮತ್ತು ಸಂದರ್ಶಕರು ವಿಶ್ವವಿದ್ಯಾಲಯದ ಕಾರ್ಯನಿರ್ವಹಣೆಯ ಸುಧಾರಣೆಗಾಗಿ ಸಲಹೆಗಳನ್ನು ನೀಡಬಹುದು.

(2) ಸಂದರ್ಶಕರು, ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಸಂದರ್ಶಕರು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ವ್ಯವಹಾರಗಳಿಗೆ ಸಂಬಂಧಿಸಿದಂತೆ, ಯಾವುದೇ ಪತ್ರ ಅಥವಾ ಮಾಹಿತಿಯನ್ನು ತರಿಸಿಕೊಳ್ಳುವುದು.

(ii) ಸಂದರ್ಶಕರು, ಅವರು ಸ್ವೀಕರಿಸಿದ ಮಾಹಿತಿಯ ಆಧಾರದ ಮೇಲೆ ವಿಶ್ವವಿದ್ಯಾಲಯಗಳ ಯಾವುದೇ ಪ್ರಾಧಿಕಾರವು ಮಾಡಿದ ಯಾವುದೇ ಆದೇಶ, ನಡೆಸಿದ ವ್ಯವಹರಣೆಗಳು ಅಥವಾ ಕೈಗೊಂಡ ತೀರ್ಮಾನಗಳು, ಈ ಅಧಿನಿಯಮ, ವಿನಿಯಮಗಳು ಅಥವಾ ನಿಯಮಗಳಿಗೆ ಪೂರಕವಾಗಿಲ್ಲವೆಂದು ಮನಗಂಡರೆ ಅವರು ವಿಶ್ವವಿದ್ಯಾಲಯದ ಹಿತಾಸಕ್ತಿಯಿಂದ ತಾವು ಸೂಕ್ತವೆಂದು ಭಾವಿಸಬಹುದಾದಂಥ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಹಾಗೆ ಹೊರಡಿಸಿದ ನಿರ್ದೇಶನಗಳನ್ನು ಸಂಬಂಧಪಟ್ಟವರೆಲ್ಲರೂ ಪಾಲಿಸತಕ್ಕದ್ದು.

**14. ಸಹ–ಸಂದರ್ಶಕರು.–** (1) ಕರ್ನಾಟಕ ಸರ್ಕಾರದ ಮಾನ್ಯ ಉನ್ನತ ಶಿಕ್ಷಣ ಸಚಿವರು ವಿಶ್ವವಿದ್ಯಾಲಯದ ಸಹ–ಸಂದರ್ಶಕರಾಗಿರತಕ್ಕದ್ದು.

(2) ಸಂದರ್ಶಕರ ಅನುಪಸ್ಥಿತಿಯಲ್ಲಿ ಸಹ–ಸಂದರ್ಶಕರು ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**15. ಕುಲಾಧಿಪತಿಗಳು.–** (1) ಕುಲಾಧಿಪತಿಯವರನ್ನು ಪ್ರಾಯೋಜಕ ಸಂಸ್ಥೆಯು ನೇಮಿಸತಕ್ಕದ್ದು.

(2) ಪ್ರಾಯೋಜಕ ಸಂಸ್ಥೆಯ ಪ್ರಸ್ತುತ ಅಧ್ಯಕ್ಷರು ಮೊದಲನೇ ಕುಲಾಧಿಪತಿಗಳಾಗಿರತಕ್ಕದ್ದು, ಅವರು ತಮ್ಮ ಜೀವನಪರ್ಯಂತ ಅಥವಾ ಅವರು ತಮ್ಮ ಪದವನ್ನು ಬಿಟ್ಟುಕೊಡುವವರೆಗೆ ಕುಲಾಧಿಪತಿಗಳಾಗಿ ಪದಧಾರಣ ಮಾಡಿರತಕ್ಕದ್ದು.

(3) ತದನಂತರದ ಕುಲಾಧಿಪತಿಗಳು, ಅಂಥ ನೇಮಕಾತಿಯನ್ನು ಪರಿಗಣಿಸುವ ಸಂದರ್ಭದಲ್ಲಿ ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ, ಪ್ರಾಯೋಜಕ ಸಂಸ್ಥೆಯ ನ್ಯಾಸಧಾರಿಯಾಗಿರತಕ್ಕದ್ದು ಅಥವಾ ಶಿಕ್ಷಣ, ವಿಜ್ಞಾನ, ಸಂಸ್ಕೃತಿ ಅಥವಾ ಸಾರ್ವಜನಿಕ ಜೀವನ ಕ್ಷೇತ್ರಗಳಲ್ಲಿ ರಾಷ್ಟ್ರೀಯ ಮಟ್ಟದ ಛಾಪನ್ನು ಪಡೆದಿರುವ ಅಂಥ ಇತರ ವ್ಯಕ್ತಿಯಾಗಿರತಕ್ಕದ್ದು.

(4) ಹಾಗೆ ನೇಮಕಗೊಂಡ ತದನಂತರದ ಕುಲಾಧಿಪತಿಗಳು ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ಪದಧಾರಣ ಮಾಡತಕ್ಕದ್ದು.

(5) ಕುಲಾಧಿಪತಿಗಳು ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳ ಅಡಿಯಲ್ಲಿ ಅವರಿಗೆ ಪ್ರದಾನ ಮಾಡಬಹುದಾದಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು, ಅವುಗಳಲ್ಲಿ ಈ ಮುಂದಿನ ಅಧಿಕಾರಗಳು ಒಳಗೊಂಡಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುವುದು;

(ii) ಸಂದರ್ಶಕರ ಮತ್ತು ಸಹ–ಸಂದರ್ಶಕರಿಬ್ಬರ ಗೈರುಹಾಜರಿಯಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಘಟಿಕೋತ್ಸವಗಳಲ್ಲಿ ಅಧ್ಯಕ್ಷತೆಯನ್ನು ವಹಿಸುವುದು;

(iii) ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವುದು;

(iv) ಈ ಅಧಿನಿಯಮ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಅನುಸಾರವಾಗಿ ಕುಲಪತಿಗಳನ್ನು ನೇಮಿಸುವುದು ಅಥವಾ ಪುನರ್ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(v) ಈ ಅಧಿನಿಯಮದ 16ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ನಾಮನಿರ್ದೇಶಕ ಸಮಿತಿಯ ಸದಸ್ಯರಾಗಿ ಒಬ್ಬ ವ್ಯಕ್ತಿಯನ್ನು ನಾಮನಿರ್ದೇಶನ ಮಾಡುವುದು;

(vi) ಸಹಕುಲಪತಿಗಳು, ಡೀನ್, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿಗಳ ನೇಮಕಾತಿಯನ್ನು ಪೂರ್ವಾನುಮೋದಿಸುವುದು;

(vii) ಪ್ರಬಂಧಕ ಮಂಡಳಿಯ ಸದಸ್ಯರನ್ನಾಗಿ ಇಬ್ಬರು ಶಿಕ್ಷಣ ತಜ್ಞರನ್ನು ನಾಮನಿರ್ದೇಶಿಸುವುದು;

(viii) ಮೊದಲ ಸಹಕುಲಪತಿಗಳು ಮತ್ತು ಹಣಕಾಸು ಅಧಿಕಾರಿಗಳನ್ನು ನೇಮಿಸುವುದು;

(ix) ಮೊದಲ ವ್ಯವಸ್ಥಾಪನಾ ಮಂಡಳಿ, ಹಣಕಾಸು ಸಮಿತಿ, ಸಂಶೋಧನಾ ಪರಿಷತ್ತು ಹಾಗೂ ಶೈಕ್ಷಣಿಕ ಪರಿಷತ್ತುಗಳನ್ನು ರಚಿಸುವುದು;

(x) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ ಕಾರ್ಯಸೂಚಿ ವಿಷಯಗಳನ್ನು ಪೂರ್ವಾನುಮೋದಿಸುವುದು;

(xi) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ (ಪ್ರಬಂಧಕ ಮಂಡಳಿಯ ಸಭೆಯಲ್ಲಿ ಉಂಟಾದ ವಿವಾದಗಳನ್ನು ಹೊರತುಪಡಿಸಿ) ವಿವಾದಗಳನ್ನು ಪರಿಹರಿಸುವುದು.

(6) ಪದಾಧಿಕಾರಿ ಅಥವಾ ಸಂಸ್ಥೆ ಮತ್ತು ವಿಶ್ವವಿದ್ಯಾಲಯದ ಯಾವುದೇ ಇತರ ಪದಾಧಿಕಾರಿ ಅಥವಾ ಸಂಸ್ಥೆಯ ನಡುವೆ ವಿವಾದಗಳು ಉಂಟಾದಲ್ಲಿ, ಆ ವಿವಾದವನ್ನು ಕುಲಾಧಿಪತಿಯವರ ಪರ್ಯಾಲೋಚನೆಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿವಾದದ ಸಂದರ್ಭದಲ್ಲಿ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**16. ಕುಲಪತಿಗಳು.–** (1) (2)ನೇ ಉಪಪ್ರಕರಣದ ಉಪಬಂಧಗಳಿಗೆ ಅನುಸಾರವಾಗಿ ನಾಮನಿರ್ದೇಶಕ ಸಮಿತಿಯು ಶಿಫಾರಸ್ಸು ಮಾಡಿದ ಮೂರು ವ್ಯಕ್ತಿಗಳ ಪೈಕಿಯಿಂದ ಒಬ್ಬರನ್ನು ಮೂರು ವರ್ಷಗಳ ಅವಧಿಗಾಗಿ ಕುಲಪತಿಗಳನ್ನಾಗಿ, ಪರಿನಿಯಮಗಳಲ್ಲಿ ನಿಯಮಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರು

ನೇಮಿಸತಕ್ಕದ್ದು. ಮೂರು ವರ್ಷಗಳ ಅವಧಿಯು ಮುಗಿದ ತರುವಾಯ, ಇದನ್ನು ಮೂರು ವರ್ಷಗಳ ಮತ್ತೊಂದು ಅವಧಿಗೆ ನವೀಕರಿಸಬಹುದು:

ಪರಂತು, ಕುಲಪತಿಯವರು, ತಮ್ಮ ಅವಧಿ ಮುಗಿದ ನಂತರವೂ ಹೊಸ ಕುಲಪತಿಯವರು ಸೇರಿಕೊಳ್ಳುವವರೆಗೆ ಪದದಲ್ಲಿ ಮುಂದುವರೆಯತಕ್ಕದ್ದು. ಆದಾಗ್ಯೂ ಈ ಅವಧಿಯು ಯಾವುದೇ ಸಂದರ್ಭದಲ್ಲಿ ಒಂದು ವರ್ಷವನ್ನು ಮೀರತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಹೇಳಿರುವ ನಾಮನಿರ್ದೇಶಕ ಸಮಿತಿಯಲ್ಲಿ ಈ ಮುಂದಿನ ವ್ಯಕ್ತಿಗಳು ಇರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು ನಾಮನಿರ್ದೇಶಿಸಿದ ಒಬ್ಬ ವ್ಯಕ್ತಿ;

(ii) ಪ್ರಬಂಧಕ ಮಂಡಳಿಯ ಇಬ್ಬರು ನಾಮ ನಿರ್ದೇಶಿತರು, ಇವರಲ್ಲಿ ಒಬ್ಬರನ್ನು ಪ್ರಬಂಧಕ ಮಂಡಳಿಯು ಸಮಿತಿಯ ಸಂಚಾಲಕರೆಂದು ನಾಮನಿರ್ದೇಶಿಸತಕ್ಕದ್ದು.

(3) ನಾಮನಿರ್ದೇಶನ ಸಮಿತಿಯು, ಅರ್ಹತೆಯ ಆಧಾರದ ಮೇಲೆ ಕುಲಪತಿಯ ಹುದ್ದೆಗೆ ಸೂಕ್ತವಾದ ಮೂರು ವ್ಯಕ್ತಿಗಳ ಹೆಸರನ್ನು ಶಿಫಾರಸ್ಸು ಮಾಡತಕ್ಕದ್ದು ಮತ್ತು ಅದನ್ನು ಪ್ರತಿಯೊಬ್ಬ ವ್ಯಕ್ತಿಯ ವಿದ್ಯಾರ್ಹತೆ ಮತ್ತಿತರ ವಿಶಿಷ್ಟ ಪ್ರಶಸ್ತಿಗಳನ್ನು ತಿಳಿಸುವ ಒಂದು ಸಂಕ್ಷಿಪ್ತ ವರದಿಯೊಂದಿಗೆ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು.

(4) ಕುಲಪತಿಯವರು ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಾಹಕ ಮತ್ತು ಶೈಕ್ಷಣಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣವನ್ನು ಚಲಾಯಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯದ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೊಳಿಸತಕ್ಕದ್ದು:

ಪರಂತು, ಶಿಕ್ಷಕರ ನೇಮಕಾತಿಯನ್ನು ಹೊರತುಪಡಿಸಿ ಕೂಡಲೇ ಕ್ರಮವನ್ನು ಕೈಗೊಳ್ಳಬೇಕಾದ ತುರ್ತು ಸ್ವರೂಪದ ಯಾವುದೇ ಇತರ ವಿಷಯಗಳಲ್ಲಿ ಮತ್ತು ಅದನ್ನು ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ವಿಶ್ವವಿದ್ಯಾಲಯವು ಇದಕ್ಕಾಗಿ ಅಧಿಕೃತಗೊಳಿಸಿದ್ದ ಯಾವೊಬ್ಬ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ಇತರ ಸಂಸ್ಥೆಯು ಕೂಡಲೇ ಕ್ರಮಕೈಗೊಳ್ಳುವುದು ಸಾಧ್ಯವಿರದಿರುವಾಗ ಕುಲಪತಿಯವರು ತಾನು ಸೂಕ್ತವೆಂದು ಭಾವಿಸಬಹುದಾದಂತಹ ಕ್ರಮವನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆದು ಕೈಗೊಳ್ಳತಕ್ಕದ್ದು.

(5) ಕುಲಪತಿಯವರು ಪರಿನಿಯಮಗಳು ಅಥವಾ ನಿಯಮಗಳಲ್ಲಿ ಹೇಳಲಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು:

ಪರಂತು, ಕುಲಪತಿಗಳ ಅಭಿಪ್ರಾಯದಲ್ಲಿ, ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಯಾವುದೇ ನಿರ್ಣಯವು, ಈ ಅಧಿನಿಯಮ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳು, ವಿನಿಯಮಗಳು ಅಥವಾ ನಿಯಮಗಳ ಮೂಲಕ ಪ್ರದತ್ತವಾದ ಅಧಿಕಾರದ ಹೊರಗಿದ್ದರೆ ಅಥವಾ ವಿಶ್ವವಿದ್ಯಾಲಯದ ಹಿತಾಸಕ್ತಿಗೆ ಪ್ರತಿಕೂಲವಾಗಬಹುದಾಗಿದ್ದರೆ, ಅದರ ನಿರ್ಣಯದ ದಿನಾಂಕದಿಂದ ಹದಿನೈದು ದಿನಗಳ ಒಳಗೆ ತನ್ನ ನಿರ್ಣಯವನ್ನು ಪರಿಷ್ಕರಿಸಲು ಸಂಬಂಧಪಟ್ಟ ಪ್ರಾಧಿಕಾರವನ್ನು ಆತನು ಕೋರತಕ್ಕದ್ದು ಮತ್ತು ಪ್ರಾಧಿಕಾರವು ಅಂಥ ನಿರ್ಣಯವನ್ನು ಸಂಪೂರ್ಣವಾಗಿ ಅಥವಾ ಭಾಗಶ:ವಾಗಿ ಪರಿಷ್ಕರಿಸಲು ನಿರಾಕರಿಸಿದ ಸಂದರ್ಭದಲ್ಲಿ ಅಥವಾ ಹದಿನೈದು ದಿನಗಳೊಳಗೆ ಯಾವುದೇ ನಿರ್ಣಯವನ್ನು ತೆಗೆದುಕೊಳ್ಳಲು ವಿಫಲವಾದಲ್ಲಿ, ನಂತರ ಅಂಥ ವಿಷಯವನ್ನು ಕುಲಾಧಿಪತಿಗಳಿಗೆ ಕಳುಹಿಸತಕ್ಕದ್ದು ಮತ್ತು ಈ ಬಗ್ಗೆ ಇವರ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

(6) ಕುಲಪತಿಯವರ ಸೇವೆಗಳನ್ನು, ಪ್ರಬಂಧಕ ಮಂಡಳಿಯ ಅನುಮೋದನೆಯೊಂದಿಗೆ ಮತ್ತು ಸಹಜ ನ್ಯಾಯದ ತತ್ವಗಳನ್ನು ಅನುಸರಿಸಿದ ನಂತರ ಹಾಗೂ ಶಿಸ್ತಿನ ಆಧಾರದ ಮೇಲೆ ಅಂತ್ಯಗೊಳಿಸುವ ಸಂದರ್ಭವೂ ಸೇರಿದಂತೆ, ಪ್ರಕರಣದ ಬಗ್ಗೆ ಕುಲಪತಿಯು ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡಿದ ತರುವಾಯ, ಕುಲಾಧಿಪತಿಯವರು ಅಂತ್ಯಗೊಳಿಸಬಹುದು.

(7) ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಸಂದರ್ಶಕರು, ಸಹ–ಸಂದರ್ಶಕರು ಮತ್ತು ಕುಲಾಧಿಪತಿಯವರು ಇವರುಗಳ ಗೈರು ಹಾಜರಿಯ ಸಂದರ್ಭದಲ್ಲಿ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**17. ಸಹಕುಲಪತಿಗಳು.**– ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಮೂರು ಜನರನ್ನು ಮೀರದಂತೆ ಸಹಕುಲಪತಿಗಳನ್ನು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**18. ವ್ಯಾಸಂಗ ವಿಭಾಗಗಳ ಡೀನ್‌ಗಳು.**– ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಪರಿನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವ್ಯಾಸಂಗ ವಿಭಾಗಗಳ

ಡೀನ್‌ಗಳನ್ನು ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**19. ಕುಲಸಚಿವರು.–** (1) ಕುಲಾಧಿಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಸಚಿವರನ್ನು ನೇಮಕ ಮಾಡತಕ್ಕದ್ದು.

(2) ಪರಿನಿಯಮಗಳಲ್ಲಿ ಪರಿಭಾಷಿಸಿರುವಂಥ ಎಲ್ಲಾ ಕರಾರುಗಳನ್ನು ವಿಶ್ವವಿದ್ಯಾಲಯದ ಪರವಾಗಿ ಕುಲಸಚಿವರು ಮಾಡಿಕೊಳ್ಳತಕ್ಕದ್ದು ಮತ್ತು ಅದಕ್ಕೆ ಸಹಿ ಹಾಕತಕ್ಕದ್ದು.

(3) ಕುಲಸಚಿವರು ವಿಶ್ವವಿದ್ಯಾಲಯದ ಪರವಾಗಿ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಪರಿನಿಯಮಗಳಿಂದ ಪ್ರದತ್ತಗೊಳಿಸಬಹುದಾದಂಥ ಅಥವಾ ಕುಲಾಧಿಪತಿಯವರು ಮತ್ತು ಕುಲಪತಿಯವರು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು ವಿಶ್ವವಿದ್ಯಾಲಯದ ದಾಖಲೆಗಳು ಮತ್ತು ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು, ಕುಲಪತಿಯವರು ಅಥವಾ ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಅಂಥ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿತಕ್ಕದ್ದು.

**20. ಹಣಕಾಸು ಅಧಿಕಾರಿ.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು, ಪರಿನಿಯಮಗಳ ಮೂಲಕ ಪ್ರದತ್ತಗೊಳಿಸಬಹುದಾದ ಅಂಥ ವಿಧಾನದಲ್ಲಿ ಹಣಕಾಸು ಅಧಿಕಾರಿಯನ್ನು ನೇಮಕ ಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**21. ಇತರ ಅಧಿಕಾರಿಗಳು.–** ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ ನೇಮಕಾತಿಯ ವಿಧಾನ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಕರ್ತವ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ – IV

## ವಿಶ್ವವಿದ್ಯಾಲಯದ ಪ್ರಾಧಿಕಾರಗಳು

**22. ವಿಶ್ವವಿದ್ಯಾಲಯದ ಪ್ರಾಧಿಕಾರಗಳು.–** ಈ ಮುಂದಿನವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:–

(i) ಪ್ರಬಂಧಕ ಮಂಡಳಿ;

(ii) ವ್ಯವಸ್ಥಾಪನಾ ಮಂಡಳಿ;

(iii) ಶೈಕ್ಷಣಿಕ ಪರಿಷತ್ತು;

(iv) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು;

(v) ಹಣಕಾಸು ಸಮಿತಿ; ಮತ್ತು

(vi) ವಿಶ್ವವಿದ್ಯಾಲಯದ ಪ್ರಾಧಿಕಾರಗಳೆಂದು ಪರಿನಿಯಮಗಳ ಮೂಲಕ ಘೋಷಿಸಬಹುದಾದ ಅಂಥ ಇತರ ಪ್ರಾಧಿಕಾರಗಳು.

**23. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು.–** (1) ಪ್ರಬಂಧಕ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು – ಅಧ್ಯಕ್ಷರು;

(ii) ಕುಲಪತಿಯವರು – ಸದಸ್ಯರು;

(iii) ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(iv) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(v) ರಾಜ್ಯ ಸರ್ಕಾರವು ನಾಮ ನಿರ್ದೇಶನ ಮಾಡಿದ ಆಡಳಿತವನ್ನು ಒಳಗೊಂಡಂತೆ ವ್ಯವಸ್ಥಾಪನೆ, ಹಣಕಾಸು ಅಥವಾ ಯಾವುದೇ ಇತರ ವಿಶೇಷ ಕ್ಷೇತ್ರದಲ್ಲಿನ ಒಬ್ಬರು ತಜ್ಞರು;

(vi) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಇಬ್ಬರು ವ್ಯಕ್ತಿಗಳು ಅವರ ಪೈಕಿ ಒಬ್ಬರು ಮಹಿಳೆಯಾಗಿರತಕ್ಕದ್ದು;

(vii) ಸಹ ಕುಲಪತಿಯವರು ಮತದಾನದ ಹಕ್ಕಿಲ್ಲದ ಸದಸ್ಯರಾಗಿರತಕ್ಕದ್ದು;

(viii) ವಿಶ್ವವಿದ್ಯಾಲಯ ಅನುದಾನ ಆಯೋಗದ ನಾಮನಿರ್ದೇಶಿತ ಒಬ್ಬ ಸುಪ್ರಸಿದ್ಧ ಶಿಕ್ಷಣ ತಜ್ಞರು.

(2) ಕುಲಸಚಿವರು ಪ್ರಬಂಧಕ ಮಂಡಳಿಯ ಮತ ದಾನದ ಹಕ್ಕಿರದ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ಪ್ರಬಂಧಕ ಮಂಡಳಿಯ ಸದಸ್ಯರ ಪದಾವಧಿ, ಸರ್ಕಾರದಿಂದ ನಾಮನಿರ್ದೇಶಿತರಾದ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ನೇಮಕಾತಿ, ನವೀಕರಣ ಮತ್ತು ತೆಗೆದುಹಾಕುವುದು ಮುಂತಾದವುಗಳು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಾಧಿಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರ ಗೈರುಹಾಜರಿಯಲ್ಲಿ ಕುಲಾಧಿಪತಿಯವರಿಂದ ನಾಮನಿರ್ದೇಶಿತರಾದ ಯಾರಾದರೂ ಒಬ್ಬರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು. ಅಂಥ ಸಭೆಯ ಅಧ್ಯಕ್ಷತೆಯನ್ನು ವಹಿಸುವುದಕ್ಕೆ ಕುಲಾಧಿಪತಿಯವರು ಯಾವೊಬ್ಬ ವ್ಯಕ್ತಿಯನ್ನೂ ನಾಮನಿರ್ದೇಶನ ಮಾಡಿರದಿದ್ದಲ್ಲಿ, ಸಭೆಯಲ್ಲಿ ಹಾಜರಿರುವ ಸದಸ್ಯರು ಸರಳ ಬಹುಮತದ ಮೂಲಕ ಅವರುಗಳ ಪೈಕಿಯಿಂದಲೇ ಆ ಸಭೆಗೆ ಮಾತ್ರವೇ ಅಧ್ಯಕ್ಷನನ್ನು ಚುನಾಯಿಸತಕ್ಕದ್ದು.

(5) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಿಗೆ, ಅಂಥ ಸಭೆಯಲ್ಲಿ ಹಾಜರಾಗುವ ಮತ್ತು ಮತದಾನ ನೀಡುವ ಮೂರು ಜನ ಸದಸ್ಯರು ಗಣಪೂರ್ತಿ (ಕೋರಂ) ಆಗಿರತಕ್ಕದ್ದು:

ಪರಂತು, ಪ್ರಬಂಧಕ ಮಂಡಳಿಯ ಯಾವುದೇ ಸಭೆಯ ಕೋರಂ ಪೂರ್ಣವಾಗಬೇಕಾದರೆ ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಿರುವುದು ಮತ್ತು ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ನಾಮನಿರ್ದೇಶಿತರು ಹಾಜರಾಗದೇ ಇದ್ದಾಗ ಕುಲಪತಿಯವರು ಹಾಜರಿರುವುದು ಯಾವಾಗಲೂ ಅವಶ್ಯವಾಗಿರತಕ್ಕದ್ದು.

(6) ಪ್ರಬಂಧಕ ಮಂಡಳಿಯು ವಿಶ್ವವಿದ್ಯಾಲಯದ ಪ್ರಧಾನ ಪ್ರಬಂಧಕ ಸಂಸ್ಥೆಯಾಗಿರತಕ್ಕದ್ದು ಮತ್ತು ಅದು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಕಗೊಳಿಸುವುದು;

(ii) ವಿಶ್ವವಿದ್ಯಾಲಯವು ಅನುಸರಿಸಬೇಕಾದ ಕಾರ್ಯನೀತಿಗಳನ್ನು ರಚಿಸುವುದು;

(iii) ಈ ಅಧಿನಿಯಮದ ಅಥವಾ ಪರಿನಿಯಮಗಳ ಅಥವಾ ನಿಯಮಗಳ ಉಪಬಂಧಗಳಿಗೆ ಅನುಗುಣವಾಗಿ ಇರದ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ತೀರ್ಮಾನಗಳನ್ನು ಪುನರೀಕ್ಷಿಸುವುದು;

(iv) ವಿಶ್ವವಿದ್ಯಾಲಯದ ಆಯವ್ಯಯ ಮತ್ತು ವಾರ್ಷಿಕ ವರದಿಗಳನ್ನು ಅನುಮೋದಿಸುವುದು;

(v) ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸುವುದು ಅಥವಾ ಈಗಾಗಲೇ ಇರುವ ಪರಿನಿಯಮಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವುದು ಅಥವಾ ನಿರಸನಗೊಳಿಸುವುದು;

(vi) ವಿಶ್ವವಿದ್ಯಾಲಯವನ್ನು ಸ್ವಯಂಸಮಾಪನಗೊಳಿಸುವ ನಿರ್ಧಾರವನ್ನು ತೆಗೆದುಕೊಳ್ಳುವುದು;

(vii) ಸರ್ಕಾರಕ್ಕೆ ಸಲ್ಲಿಸುವ ಪ್ರಸ್ತಾವಗಳನ್ನು ಅನುಮೋದಿಸುವುದು;

(viii) ಶುಲ್ಕ ನಿಯಂತ್ರಣ ಸಮಿತಿಗೆ ಮೂವರು ಸದಸ್ಯರನ್ನು ನಾಮನಿರ್ದೇಶನ ಮಾಡುವುದು;

(ix) ವಿಶ್ವವಿದ್ಯಾಲಯದ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕೆ ಅಪೇಕ್ಷಣೀಯವೆಂದು ಕಂಡುಬರುವಂಥ ತೀರ್ಮಾನಗಳನ್ನು ಮತ್ತು ಕ್ರಮಗಳನ್ನು ಕೈಗೊಳ್ಳುವುದು.

(7) ಪ್ರಬಂಧಕ ಮಂಡಳಿಯು ಒಂದು ವರ್ಷದಲ್ಲಿ ಕನಿಷ್ಠ ಮೂರು ಸಲ ಸಭೆ ಸೇರತಕ್ಕದ್ದು.

(8) ಪ್ರಬಂಧಕ ಮಂಡಳಿಯು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಸಮಯ ಮತ್ತು ಸ್ಥಳದಲ್ಲಿ ಸಭೆ ಸೇರತಕ್ಕದ್ದು.

**24. ವ್ಯವಸ್ಥಾಪನಾ ಮಂಡಳಿ.-** (1) ವ್ಯವಸ್ಥಾಪನಾ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಗಳು;

(ii) ಸಹಕುಲಪತಿಗಳು;

(iii) ಕುಲಸಚಿವರು;

(iv) ಪ್ರಾಯೋಜಕ ಸಂಸ್ಥೆಯ ಇಬ್ಬರು ನಾಮನಿರ್ದೇಶಿತರು;

(v) ಕುಲಪತಿಗಳು ನಾಮನಿರ್ದೇಶಿಸಬಹುದಾದ ವಿದ್ಯಾಲಯಗಳ ಇಬ್ಬರು ಡೀನ್‌ಗಳು;

(2) ಕುಲಪತಿಯವರು ವ್ಯವಸ್ಥಾಪನಾ ಮಂಡಳಿಯ ಅಧ್ಯಕ್ಷರಾಗಿರತಕ್ಕದ್ದು ಮತ್ತು ಕುಲಸಚಿವರು ವ್ಯವಸ್ಥಾಪನಾ ಮಂಡಳಿಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ವ್ಯವಸ್ಥಾಪನಾ ಮಂಡಳಿಯು ವಿಶ್ವವಿದ್ಯಾಲಯದ ಕಾರ್ಯನಿರ್ವಾಹಕ ಸಂಸ್ಥೆಯಾಗಿರತಕ್ಕದ್ದು. ವ್ಯವಸ್ಥಾಪನಾ ಮಂಡಳಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ವ್ಯವಸ್ಥಾಪನಾ ಮಂಡಳಿಯ ಎಲ್ಲಾ ಸಭೆಗಳಲ್ಲಿ ಯಾವಾಗಲೂ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು ಹಾಗೂ ಕುಲಪತಿಯವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೇ ಇದ್ದ ಸಂದರ್ಭದಲ್ಲಿ ಸಭೆಯಲ್ಲಿ ಹಾಜರಿರುವ ಸದಸ್ಯರು ಚುನಾಯಿಸಿದ ಯಾವುದೇ ಇತರ ಸದಸ್ಯರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ವ್ಯವಸ್ಥಾಪನಾ ಮಂಡಳಿಯ ಸಭೆಯಲ್ಲಿ ಯಾವುದೇ ವಿಷಯವನ್ನು ಕುರಿತು ವಿವಾದ ಉಂಟಾದಲ್ಲಿ ಸದರಿ ವಿಷಯವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯದ ಬಗ್ಗೆ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**25. ಶೈಕ್ಷಣಿಕ ಪರಿಷತ್ತು.**–(1) ಶೈಕ್ಷಣಿಕ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಕಾರ್ಯದರ್ಶಿಗಳು

(iv) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಶೈಕ್ಷಣಿಕ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಶೈಕ್ಷಣಿಕ ಸಂಸ್ಥೆಯಾಗಿರತಕ್ಕದ್ದು ಮತ್ತು ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಹಾಗೂ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**26. ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು.**– (1) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಸಂಶೋಧನಾ ಮತ್ತು ಅನ್ವೇಷಣಾ ಸಮಿತಿಯಾಗಿರತಕ್ಕದ್ದು ಹಾಗೂ ಸಂಶೋಧನಾ ಕ್ಷೇತ್ರಗಳ ಆದ್ಯತೆಯೂ ಒಳಗೊಂಡಂತೆ, ವಿಶ್ವವಿದ್ಯಾಲಯವು ಕೈಗೊಳ್ಳಬೇಕಾದ ಸಂಶೋಧನೆಯ ಬಗ್ಗೆ ಒಂದು ವ್ಯಾಪಕವಾದ ಪರಿಪೂರ್ಣ ಭವಿಷ್ಯದ್ ದೃಷ್ಟಿಯನ್ನು ಒದಗಿಸತಕ್ಕದ್ದು. ಈ ಪರಿಷತ್ತು, ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಮತ್ತು ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಸಂಶೋಧನೆ ಮತ್ತು ಅನ್ವೇಷಣಾ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಸಂಶೋಧನೆಯ ಡೀನ್ – ಕಾರ್ಯದರ್ಶಿ

(iv) ಅನ್ವೇಷಣಾ ವಿಭಾಗದ ಮುಖ್ಯಸ್ಥರು – ಸದಸ್ಯರು

(V) ಎಲ್ಲಾ ವ್ಯಾಸಂಗ ವಿಭಾಗಗಳ ಡೀನ್‌ಗಳು – ಸದಸ್ಯರು ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

**27. ಹಣಕಾಸು ಸಮಿತಿ.**– (1) ಹಣಕಾಸು ಸಮಿತಿ ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು ಅಥವಾ ಅವರ ನಾಮನಿರ್ದೇಶಿತರು – ಅಧ್ಯಕ್ಷರು

(ii) ಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಸದಸ್ಯರು

(iv) ಹಣಕಾಸು ಅಧಿಕಾರಿ – ಕಾರ್ಯದರ್ಶಿ

(v) ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು – ಸದಸ್ಯರು; ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಹಣಕಾಸು ಸಮಿತಿಯು ಹಣಕಾಸಿನ ವಿಷಯಗಳನ್ನು ಕೈಗೊಳ್ಳುವ ವಿಶ್ವವಿದ್ಯಾಲಯದ ಪ್ರಧಾನ ಹಣಕಾಸು ಸಂಸ್ಥೆಯಾಗಿರತಕ್ಕದ್ದು ಹಾಗೂ ಅದು ಈ ಅಧಿನಿಯಮ, ನಿಯಮಗಳು ಮತ್ತು ಪರಿನಿಯಮಗಳ ಉಪಬಂಧಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಹಣಕಾಸು ವಿಷಯಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**28. ಇತರ ಪ್ರಾಧಿಕಾರಗಳು.–** ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ರಚನೆ, ಅಧಿಕಾರಗಳು ಹಾಗೂ ಪ್ರಕಾರ್ಯಗಳು ಪರಿನಿಯಮಗಳಿಂದ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

**29. ಒಂದು ಪ್ರಾಧಿಕಾರದ ಅಥವಾ ಸಂಸ್ಥೆಯ ಸದಸ್ಯತ್ವಕ್ಕೆ ಅನರ್ಹತೆ.–** ವಿಶ್ವವಿದ್ಯಾಲಯದ ಸಂಸ್ಥೆಗಳ ಯಾವುವೇ ಪ್ರಾಧಿಕಾರಗಳ ಒಬ್ಬ ವ್ಯಕ್ತಿಯು,–

(ಎ) ಅಸ್ವಸ್ಥ ಚಿತ್ತನಾಗಿದ್ದು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿಸಲ್ಪಟ್ಟಿದ್ದರೆ;

(ಬಿ) ಅವಿಮುಕ್ತ ದಿವಾಳಿಯಾಗಿದ್ದರೆ;

(ಸಿ) ನೈತಿಕ ಅಧಃಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದರೆ;

(ಡಿ) ಖಾಸಗಿ ಬೋಧನಾ ತರಗತಿಗಳನ್ನು ನಡೆಸುತ್ತಿದ್ದರೆ ಅಥವಾ ಸ್ವತಃ ನಿರತನಾಗಿದ್ದರೆ;

(ಇ) ಯಾವುದೇ ವಿಧದಲ್ಲಿ, ಎಲ್ಲಿಯೇ, ಯಾವುದೇ ಪರೀಕ್ಷೆಯನ್ನು ನಡೆಸುವಲ್ಲಿ ಅನುಚಿತ ಅಭ್ಯಾಸದಲ್ಲಿ ತೊಡಗಿದ್ದಕ್ಕಾಗಿ ಅಥವಾ ಉತ್ತೇಜಿಸಿದ್ದಕ್ಕಾಗಿ ದಂಡಿತನಾಗಿದ್ದರೆ;

(ಎಫ್) ಪ್ರಾಯೋಜಿತ ಸಂಸ್ಥೆಯು ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಯಾವೊಬ್ಬ ಸದಸ್ಯನನ್ನು ಆ ಪದವನ್ನು ಹೊಂದಿರುವುದಕ್ಕೆ ಅರ್ಹನಲ್ಲನೆಂದು ಲಿಖಿತದಲ್ಲಿ ಅಭಿಪ್ರಾಯ ನೀಡಿದಾಗಲೆಲ್ಲಾ,

–ಸದಸ್ಯನಾಗಿರುವುದಕ್ಕೆ ಅನರ್ಹನಾಗತಕ್ಕದ್ದು.

**30. ಖಾಲಿಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಕಾರ್ಯ ಅಥವಾ ವ್ಯವಹರಣೆಗಳು ಕೇವಲ ಅದರಲ್ಲಿ ಯಾವುದೇ ಖಾಲಿಸ್ಥಾನ ಇದೆ ಎಂಬ ಕಾರಣದಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣದಿಂದ ಮಾತ್ರವೇ ಅಸಿಂಧುವಾಗತಕ್ಕದ್ದಲ್ಲ.

**31. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು.–** (1) ಯಾವುವೇ ಕಾರ್ಯಸೂಚಿ ವಿಷಯಗಳನ್ನು ಕುಲಾಧಿಪತಿಯವರ ಪೂರ್ವಾನುಮೋದನೆಯನ್ನು ಪಡೆಯದೇ ಪ್ರಬಂಧಕ ಮಂಡಳಿಯ ಅಥವಾ ಕಾರ್ಯಕಾರಿ ಪರಿಷತ್ತು ಅಥವಾ ಯಾವುದೇ ಸಮಿತಿಯ ಸಭೆಗಳ ಕಾರ್ಯಸೂಚಿ ವಿಷಯಗಳಲ್ಲಿ ಸೇರಿಸತಕ್ಕದ್ದಲ್ಲ ಅಥವಾ ಚರ್ಚೆಗೆ ತೆಗೆದುಕೊಳ್ಳತಕ್ಕದ್ದಲ್ಲ ಮತ್ತು ತೀರ್ಮಾನಿಸತಕ್ಕದ್ದಲ್ಲ.

(2) ಈ ಅಧಿನಿಯಮದ ಯಾವುದೇ ಉಪಬಂಧಗಳನ್ನು ಪಾಲಿಸದೆ ಇರುವ ಸಂದರ್ಭದಲ್ಲಿ, ಕುಲಾಧಿಪತಿಯವರು ವಿಶ್ವವಿದ್ಯಾಲಯದ ಯಾವುದೇ ಪದಾಧಿಕಾರಿ ಅಥವಾ ಸಂಸ್ಥೆಯು ತೆಗೆದುಕೊಂಡ ಎಲ್ಲಾ ತೀರ್ಮಾನಗಳನ್ನು ವಿಪರ್ಯಯಗೊಳಿಸುವ ಮೂಲಕ ಪರಿಹಾರ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಅಧಿಕಾರವನ್ನು ಎಲ್ಲಾ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಅಂಥ ಪರಿಹಾರ ಕ್ರಮದ ಪರಿಣಾಮವಾಗಿ ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ವಿಶ್ವವಿದ್ಯಾಲಯದ ಪದಾಧಿಕಾರಿ ಅಥವಾ ಸಂಸ್ಥೆಯು ಕೈಗೊಂಡಿದ್ದ ಎಲ್ಲಾ ಅಂಥ ಕ್ರಮಗಳು, ಮೊದಲಿನಿಂದಲೂ ಶೂನ್ಯ ಮತ್ತು ಅಕೃತ ಎಂದು ಭಾವಿಸತಕ್ಕದ್ದು ಹಾಗೂ ತತ್ಪರಿಣಾಮವಾಗಿ, ಉಪಬಂಧ ಪಾಲಿಸದೇ ಇದ್ದ ವಿಷಯ ಅಥವಾ ನಿರ್ಧಾರದ ಸಂಬಂಧದಲ್ಲಿ ಅದಕ್ಕೆ ಮುಂಚೆ ಇದ್ದ ವಸ್ತುಸ್ಥಿತಿಯೇ ಮುಂದುವರಿಯತಕ್ಕದ್ದು.

## ಅಧ್ಯಾಯ – V

## ಪರಿನಿಯಮಗಳು ಮತ್ತು ವಿನಿಯಮಗಳು

**32. ಪರಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಪರಿನಿಯಮಗಳು ವಿಶ್ವವಿದ್ಯಾಲಯಕ್ಕೆ ಮತ್ತು ಸಿಬ್ಬಂದಿಗೆ ಸಂಬಂಧಿಸಿದ ಎಲ್ಲಾ ಅಥವಾ ಯಾವುದೇ ವಿಷಯಕ್ಕೆ ಈ ಕೆಳಗಿನಂತೆ ಉಪಬಂಧ ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಕಾರ್ಯಕಲಾಪಗಳನ್ನು ನಡೆಸುವ ಮತ್ತು ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸದಿರುವ ಸಂಸ್ಥೆಗಳ ರಚನೆಯ ಕಾರ್ಯವಿಧಾನ;

(ii) ಶಾಶ್ವತ ಶಾಸನಬದ್ಧ ದತ್ತಿ ನಿಧಿ, ವಿಶ್ವವಿದ್ಯಾಲಯ ದತ್ತಿ ನಿಧಿ, ಸಾಮಾನ್ಯ ನಿಧಿ ಹಾಗೂ ಅಭಿವೃದ್ಧಿ ನಿಧಿಗಳ ನಿರ್ವಹಣೆ;

(iii) ಕುಲಪತಿಗಳು, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರ ನೇಮಕಾತಿಯ ನಿಬಂಧನೆಗಳು ಹಾಗೂ ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಪ್ರಕಾರ್ಯಗಳು;

(iv) ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ, ಅಧ್ಯಾಪಕರ ಮತ್ತು ನೌಕರರ ನೇಮಕಾತಿ ವಿಧಾನ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(v) ವಿಶ್ವವಿದ್ಯಾಲಯ ಹಾಗೂ ಅದರ ಅಧಿಕಾರಿಗಳು, ವ್ಯಾಸಂಗ ವಿಭಾಗದ (ಫ್ಯಾಕಲ್ಟಿ) ಸದಸ್ಯರು, ನೌಕರರು ಹಾಗೂ ವಿದ್ಯಾರ್ಥಿಗಳ ನಡುವೆ ಉಂಟಾದ ವಿವಾದಗಳನ್ನು ಪರಿಹರಿಸುವ ಕಾರ್ಯವಿಧಾನ;

(vi) ವಿಭಾಗಗಳು ಮತ್ತು ವ್ಯಾಸಂಗ ವಿಭಾಗಗಳ (ಫ್ಯಾಕಲ್ಟಿಗಳ) ಸೃಜನೆ, ರದ್ದತಿ ಅಥವಾ ಮನಾರಚನೆ;

(vii) ಇತರ ವಿಶ್ವವಿದ್ಯಾಲಯಗಳು ಅಥವಾ ಉನ್ನತ ಕಲಿಕಾ ಸಂಸ್ಥೆಗಳ ಜೊತೆಯಲ್ಲಿ ಸಹಕರಿಸಬೇಕಾದ ರೀತಿ;

(viii) ಗೌರವ ಪದವಿಗಳ ನೀಡಿಕೆಯ ಕಾರ್ಯವಿಧಾನ;

(ix) ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿವೇತನ ಮಂಜೂರಾತಿಗೆ ಸಂಬಂಧಿಸಿದ ಉಪಬಂಧಗಳು;

(x) ವಿವಿಧ ವ್ಯಾಸಂಗ ಕ್ರಮಗಳಲ್ಲಿನ ಸೀಟುಗಳ ಸಂಖ್ಯೆಗೆ ಸಂಬಂಧಿಸಿದ ಕಾರ್ಯನೀತಿಗಳು ಮತ್ತು ಅಂಥ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಕಾರ್ಯವಿಧಾನ;

(xi) ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಶುಲ್ಕಕ್ಕೆ ಸಂಬಂಧಿಸಿದ ಕಾರ್ಯನೀತಿ;

(xii) ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಉಚಿತ ಶಿಕ್ಷಣ, ಪದಕಗಳು ಹಾಗೂ ಬಹುಮಾನಗಳನ್ನು ಪ್ರಾರಂಭಿಸುವುದು;

(xiii) ಪ್ರಬಂಧಕ ಮಂಡಳಿಯು ನಿರ್ಧರಿಸಬಹುದಾದ ಅಥವಾ ಈ ಅಧಿನಿಯಮದ ಅಡಿಯಲ್ಲಿ ಪರಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬೇಕಾದ ಅಗತ್ಯತೆಯುಳ್ಳ ಯಾವುದೇ ಇತರ ವಿಷಯಗಳು.

**33. ಪರಿನಿಯಮಗಳ ರಚನೆ ವಿಧಾನ.–** (1) ವ್ಯವಸ್ಥಾಪನಾ ಮಂಡಳಿಯು ರಚಿಸಿದ ಮೊದಲ ಪರಿನಿಯಮಗಳನ್ನು ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ವ್ಯವಸ್ಥಾಪನಾ ಮಂಡಳಿಯು ಸಲ್ಲಿಸಿದ ಮೊದಲ ಪರಿನಿಯಮಗಳನ್ನು ಪ್ರಬಂಧಕ ಮಂಡಳಿಯು ಪರಿಗಣಿಸತಕ್ಕದ್ದು ಹಾಗೂ ತಾನು ಅವಶ್ಯವೆಂದು ಭಾವಿಸಬಹುದಾದ ಅಂಥ ಮಾರ್ಪಾಡುಗಳು, ಯಾವುದಾದರು ಇದ್ದಲ್ಲಿ, ಅವುಗಳೊಡನೆ ತನ್ನ ಅನುಮೋದನೆಯನ್ನು ನೀಡತಕ್ಕದ್ದು.

(3) ವಿಶ್ವವಿದ್ಯಾಲಯವು, ಪ್ರಬಂಧಕ ಮಂಡಳಿಯು ಅನುಮೋದಿಸಿದ ಮೊದಲ ಪರಿನಿಯಮಗಳನ್ನು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ಪ್ರಕಟಿಸತಕ್ಕದ್ದು ಮತ್ತು ತದನಂತರ ಮೊದಲ ಪರಿನಿಯಮಗಳ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**34. ಪರಿನಿಯಮಗಳ ತಿದ್ದುಪಡಿಯ ಅಧಿಕಾರ.–** ಪ್ರಬಂಧಕ ಮಂಡಳಿಯು ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸಬಹುದು ಅಥವಾ ಪರಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ಅವನ್ನು ನಿರಸನಗೊಳಿಸಬಹುದು.

**35. ವಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ವಿನಿಯಮಗಳು ಈ ಮುಂದಿನ ವಿಷಯಗಳಿಗೆ ಉಪಬಂಧಗಳನ್ನು ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ವಿದ್ಯಾರ್ಥಿ ಪಟ್ಟಿಯಲ್ಲಿ ಅವರುಗಳ ದಾಖಲಾತಿ ಹಾಗೂ ಮುಂದುವರಿಕೆ;

(ii) ವಿಶ್ವವಿದ್ಯಾಲಯದ ಎಲ್ಲಾ ಪದವಿಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ನಿಗದಿಪಡಿಸತಕ್ಕ ವ್ಯಾಸಂಗ ಕ್ರಮಗಳು;

(iii) ಪದವಿಗಳ ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರದಾನ;

(iv) ಸಂಶೋಧನಾ ವೇತನಗಳು (ಫೆಲೋಶಿಪ್), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಪದಕಗಳು ಮತ್ತು ಬಹುಮಾನಗಳನ್ನು ನೀಡಲು ಷರತ್ತುಗಳು;

(v) ಪರೀಕ್ಷೆಗಳನ್ನು ನಡೆಸುವುದು ಹಾಗೂ ಪರೀಕ್ಷೆ ನಡೆಸುವ ಸಂಸ್ಥೆಗಳು, ಪರೀಕ್ಷಕರು, ಪರೀಕ್ಷಾ ಮೇಲ್ವಿಚಾರಕರು, ಟ್ಯಾಬುಲೇಟರ್‌ಗಳು ಮತ್ತು ಮಾಡರೇಟರ್‌ಗಳ ನೇಮಕಾತಿ ಷರತ್ತುಗಳು ಮತ್ತು ವಿಧಾನ ಹಾಗೂ ಅವರ ಕರ್ತವ್ಯಗಳು;

(vi) ವಿಶ್ವವಿದ್ಯಾಲಯದ ಪರೀಕ್ಷೆಗಳಿಗೆ, ಪದವಿಗಳಿಗೆ ಹಾಗೂ ಇತರ ಶೈಕ್ಷಣಿಕ ಪ್ರಶಸ್ತಿಗಳಿಗೆ ಪ್ರವೇಶಕ್ಕೆ ವಿಧಿಸತಕ್ಕ ಶುಲ್ಕ;

(vii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನಲ್ಲಿ ವಿದ್ಯಾರ್ಥಿಗಳ ನಿವಾಸಕ್ಕಾಗಿ ಷರತ್ತುಗಳು;

(viii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಶಿಸ್ತು ಪಾಲನೆ;

(ix) ಈ ಅಧಿನಿಯಮದ ಅಡಿಯಲ್ಲಿನ ಪರಿನಿಯಮಗಳಲ್ಲಿ ಉಪಬಂಧ ಕಲ್ಪಿಸಬಹುದಾಂಥ ಇತರ ಎಲ್ಲಾ ವಿಷಯಗಳು.

**36. ವಿನಿಯಮಗಳ ರಚನೆ ವಿಧಾನ.–** ವಿನಿಯಮಗಳನ್ನು ಶೈಕ್ಷಣಿಕ ಪರಿಷತ್ತು ರಚಿಸತಕ್ಕದ್ದು ಹಾಗೂ ವ್ಯವಸ್ಥಾಪನಾ ಮಂಡಳಿಯು ಅನುಮೋದಿಸತಕ್ಕದ್ದು.

**37. ವಿನಿಯಮಗಳ ತಿದ್ದುಪಡಿಗೆ ಅಧಿಕಾರ.–** ವ್ಯವಸ್ಥಾಪನಾ ಮಂಡಳಿಯ ಅನುಮೋದನೆಯೊಡನೆ ಶೈಕ್ಷಣಿಕ ಪರಿಷತ್ತು ಹೊಸ ವಿನಿಯಮಗಳನ್ನು ಅಥವಾ ಹೆಚ್ಚುವರಿ ವಿನಿಯಮಗಳನ್ನು ರಚಿಸಬಹುದು ಅಥವಾ ವಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ನಿರಸನಗೊಳಿಸಬಹುದು.

**38. ಶುಲ್ಕ ನಿಯಂತ್ರಣ ಸಮಿತಿ.–** (1) ಸರ್ಕಾರವು ರಚಿಸಿದ ನಿವೃತ್ತ ಸರ್ವೋಚ್ಚ ನ್ಯಾಯಾಲಯದ ಅಥವಾ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು ಮುಖ್ಯಸ್ಥರಾಗಿರುವ ಮತ್ತು ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ, ಉನ್ನತ ಶಿಕ್ಷಣ ಪ್ರಭಾರದಲ್ಲಿರುವ ಸರ್ಕಾರದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು, ವೈದ್ಯಕೀಯ ಶಿಕ್ಷಣದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು, ಒಬ್ಬ ಮಹಿಳೆಯೂ ಸೇರಿದಂತೆ ಪ್ರಬಂಧಕ ಮಂಡಳಿಯು ನಾಮನಿರ್ದೇಶಿಸಿದ ಇಬ್ಬರು ಶಿಕ್ಷಣ ತಜ್ಞರು ಇವರುಗಳನ್ನು ಒಳಗೊಂಡ ಒಂದು ಶುಲ್ಕ ನಿಯಂತ್ರಣ ಸಮಿತಿಯು, 9ನೇ ಪ್ರಕರಣದ ಅಡಿಯಲ್ಲಿ ಕರ್ನಾಟಕದ ವಿದ್ಯಾರ್ಥಿಗಳಿಗಾಗಿ ಮೀಸಲಿರಿಸಿದ ವಿಶ್ವವಿದ್ಯಾಲಯದ ಸ್ಥಾನಗಳ ಶುಲ್ಕವನ್ನು ನಿಯಂತ್ರಿಸತಕ್ಕದ್ದು. ಸಮಿತಿಯಲ್ಲಿ ಈ ಉದ್ದೇಶಕ್ಕಾಗಿ ಒಬ್ಬರು ಖ್ಯಾತ ಚಾರ್ಟರ್ಡ್ ಅಕೌಂಟೆಂಟ್ ರವರನ್ನು ಸಹ ಸದಸ್ಯನನ್ನಾಗಿ ಸೇರಿಸಿಕೊಳ್ಳತಕ್ಕದ್ದು.

(2) ಸಮಿತಿಯು ವಿಶ್ವವಿದ್ಯಾಲಯದ ಪ್ರವೇಶಗಳ ಮತ್ತು ಶುಲ್ಕದ ಸಂಗ್ರಹಣೆಯ ಅನುಪಾಲನೆಯನ್ನು ನೋಡಿಕೊಳ್ಳತಕ್ಕದ್ದು.

## ಅಧ್ಯಾಯ – VI

## ಸಂಕೀರ್ಣ

**39. ನೌಕರರ ಸೇವಾ ಷರತ್ತುಗಳು.–** (1) ಪರಿನಿಯಮಗಳ ಮತ್ತು ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಥವಾ ನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳು, ಯಾವುದಾದರೂ ಇದ್ದಲ್ಲಿ, ಅವುಗಳಿಗೆ ಒಳಪಟ್ಟು ಪ್ರತಿಯೊಬ್ಬ ನೌಕರನು ಲಿಖಿತ ಕರಾರಿನ ಅಡಿಯಲ್ಲಿ ನೇಮಕಗೊಳ್ಳತಕ್ಕದ್ದು ಮತ್ತು ಅದನ್ನು ವಿಶ್ವವಿದ್ಯಾಲಯದಲ್ಲಿ ಇಟ್ಟುಕೊಳ್ಳತಕ್ಕದ್ದು ಹಾಗೂ ಅದರ ಪ್ರತಿಯನ್ನು ಸಂಬಂಧಪಟ್ಟ ನೌಕರನಿಗೆ ನೀಡತಕ್ಕದ್ದು.

(2) ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಕಾರ್ಯವಿಧಾನಗಳ ಮೂಲಕ ನಿಯಂತ್ರಿಸತಕ್ಕದ್ದು.

(3) ಕರಾರಿನಿಂದಾಗಿ ವಿಶ್ವವಿದ್ಯಾಲಯ ಮತ್ತು ನೌಕರನ ಮಧ್ಯದಲ್ಲಿ ಉದ್ಭವಿಸಬಹುದಾದ ಯಾವುದೇ ವಿವಾದವನ್ನು, ಲಿಖಿತ ಕರಾರಿನಲ್ಲಿ ಉಪಬಂಧಿಸಿದ ವಿಧಾನದಲ್ಲಿ ಹಾಗೂ ಪರಿನಿಯಮಗಳ ಅನುಸಾರವಾಗಿ ಪರಿಹರಿಸತಕ್ಕದ್ದು.

**40. ಮೇಲ್ಮನವಿ ಹಕ್ಕು.–** ವಿಶ್ವವಿದ್ಯಾಲಯವು ತನ್ನ ನೌಕರರ ಅಥವಾ ವಿದ್ಯಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡ ಸಂದರ್ಭದಲ್ಲಿ, ಬಾಧಿತ ನೌಕರ ಅಥವಾ ವಿದ್ಯಾರ್ಥಿಗಳು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಮೇಲ್ಮನವಿ ಹಕ್ಕನ್ನು ಹೊಂದಿರತಕ್ಕದ್ದು.

**41. ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿ .–** ವಿಶ್ವವಿದ್ಯಾಲಯವು, ತನ್ನ ನೌಕರರ ಪ್ರಯೋಜನಕ್ಕಾಗಿ, ಪರಿನಿಯಮಗಳು ಮತ್ತು ಜಾರಿಯಲ್ಲಿರುವ ಕಾನೂನುಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿಯನ್ನು ರಚಿಸತಕ್ಕದ್ದು ಹಾಗೂ ಅಂಥ ವಿಮಾ ಯೋಜನೆಗಳನ್ನು ಒದಗಿಸತಕ್ಕದ್ದು.

**42. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಇತರ ಸಂಸ್ಥೆಯ ಸದಸ್ಯನಾಗಿ ಯಾವೊಬ್ಬ ವ್ಯಕ್ತಿಯು ಸೂಕ್ತವಾಗಿ ಆಯ್ಕೆಯಾಗಿದ್ದಾನೆಯೇ ಅಥವಾ ನೇಮಕಗೊಂಡಿದ್ದಾನೆಯೇ ಅಥವಾ ಅದಕ್ಕೆ ಅರ್ಹನಾಗಿದ್ದಾನೆಯೇ ಎಂಬ ಯಾವುದೇ ಪ್ರಶ್ನೆ ಉದ್ಭವಿಸಿದರೆ, ಆ ವಿಷಯವನ್ನು ತೀರ್ಮಾನಕ್ಕಾಗಿ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**43. ಸಮಿತಿಗಳ ರಚನೆ.–** 22ನೇ ಪ್ರಕರಣದಲ್ಲಿ ನಮೂದಿಸಿದ ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಅಧಿಕಾರವನ್ನು ಹೊಂದಿರುವ ಅಂಥ ಸದಸ್ಯರನ್ನು ಒಳಗೊಂಡ ಅಂಥ ಪ್ರಾಧಿಕಾರದ ಒಂದು ಸಮಿತಿಯನ್ನು ರಚಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**44. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಂಸ್ಥೆಯ ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ಪೈಕಿ ಯಾವುದೇ ಸ್ಥಾನವು ಆಕಸ್ಮಿಕವಾಗಿ ಖಾಲಿಯಾದರೆ, ಯಾರ ಸ್ಥಾನವು ಖಾಲಿಯಾಗಿ ತುಂಬಬೇಕಾಗಿ ಬಂದಿದೆಯೋ ಆ ಸದಸ್ಯನನ್ನು ಯಾವ ರೀತಿಯಲ್ಲಿ ಆರಿಸಲಾಗಿತ್ತೋ ಅದೇ ರೀತಿಯಲ್ಲಿ ಹೊಸ ಸದಸ್ಯನನ್ನು ಆರಿಸಿ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ಖಾಲಿ ಸ್ಥಾನವನ್ನು ಭರ್ತಿ ಮಾಡಿದ ವ್ಯಕ್ತಿಯು ಆತನು ಯಾವ ಸದಸ್ಯನ ಸ್ಥಾನದಲ್ಲಿ ಭರ್ತಿಯಾಗಿರುವನೋ ಆ ಸದಸ್ಯನು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯನಾಗಿ ಉಳಿಯುತ್ತಿದ್ದ ಬಾಕಿ ಅವಧಿಯವರೆಗೆ ಮಾತ್ರ ಸದಸ್ಯನಾಗಿರತಕ್ಕದ್ದು.

**45. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.–** ಈ ಅಧಿನಿಯಮ ಅಥವಾ ಪರಿನಿಯಮಗಳು ಅಥವಾ ನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ವಿಶ್ವವಿದ್ಯಾಲಯದ ಯಾವೊಬ್ಬ ಅಧಿಕಾರಿ ಅಥವಾ ಇತರ ನೌಕರರ ವಿರುದ್ಧ ಯಾವುದೇ ದಾವೆ ಅಥವಾ ಇತರ ಕಾನೂನು ವ್ಯವಹರಣೆಗಳನ್ನು ನಡೆಸಲು ಅವಕಾಶ ಇರತಕ್ಕದ್ದಲ್ಲ.

**46. ತಾತ್ಕಾಲಿಕ ಉಪಬಂಧಗಳು.–** ಈ ಅಧಿನಿಯಮ ಮತ್ತು ಪರಿನಿಯಮಗಳ ಯಾವುದೇ ಇತರ ಉಪಬಂಧಗಳಲ್ಲಿ ಏನೇ ಇದ್ದರೂ,–

(i) ಮೊದಲ ಕುಲಪತಿ ಮತ್ತು ಸಹಕುಲಪತಿ, ಯಾರಾದರೂ ಇದ್ದರೆ, ಅವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(ii) ಮೊದಲ ಕುಲಸಚಿವರನ್ನು ಮತ್ತು ಮೊದಲ ಹಣಕಾಸು ಅಧಿಕಾರಿಯವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು; ಮತ್ತು

(iii) ಮೊದಲ ವ್ಯವಸ್ಥಾಪನ ಮಂಡಳಿ, ಮೊದಲ ಹಣಕಾಸು ಸಮಿತಿ, ಮೊದಲ ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಹಾಗೂ ಮೊದಲ ಶೈಕ್ಷಣಿಕ ಪರಿಷತ್ತನ್ನು ಕುಲಾಧಿಪತಿಯವರು ರಚಿಸತಕ್ಕದ್ದು.

**47. ಶಾಶ್ವತ ಶಾಸನಬದ್ಧ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಕನಿಷ್ಠ ಇಪ್ಪತ್ತೈದು ಕೋಟಿ ರೂಪಾಯಿಗಳನ್ನುಳ್ಳ ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು ಇದರ ಪೈಕಿ ಕನಿಷ್ಠ ಹದಿನೈದು ಕೋಟಿ ರೂಪಾಯಿಗಳು ನಗದು ರೂಪದಲ್ಲಿ ಮತ್ತು ಇನ್ನುಳಿದದ್ದು ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ಇರತಕ್ಕದ್ದು ಮತ್ತು ಇದನ್ನು ತಾನಾಗಿಯೆ ಹೆಚ್ಚಿಸಬಹುದಾಗಿದ್ದು ಆದರೆ ಕಡಿಮೆ ಮಾಡತಕ್ಕದ್ದಲ್ಲ:

ಪರಂತು, ಬೆಂಗಳೂರು ಅಥವಾ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊರಗಿರುವ ವಿಶ್ವವಿದ್ಯಾಲಯದ ಸಂದರ್ಭದಲ್ಲಿ ಕನಿಷ್ಠ ಹತ್ತು ಕೋಟಿ ರೂಪಾಯಿಗಳು ನಗದು ರೂಪದಲ್ಲಿರತಕ್ಕದ್ದು ಮತ್ತು ಉಳಿದ ಐದು ಕೋಟಿ ರೂಪಾಯಿಗಳು ಬ್ಯಾಂಕ್ ಗ್ಯಾರಂಟಿಯ ರೂಪದಲ್ಲಿರತಕ್ಕದ್ದು.

(2) ವಿಶ್ವವಿದ್ಯಾಲಯವು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಹಣವನ್ನು ಹೂಡಲು ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯವು ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಗೆ ವರ್ಗಾವಣೆ ಮಾಡಬಹುದು. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನೂ ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(4) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಿದ ವರಮಾನದ ಶೇಕಡಾ ಎಪ್ಪತ್ತೈದರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತೈದರಷ್ಟನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಯಲ್ಲಿ ಪುನ: ತೊಡಗಿಸತಕ್ಕದ್ದು.

**48. ವಿಶ್ವವಿದ್ಯಾಲಯದ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ನಿಧಿಗಳನ್ನು ಒಳಗೊಂಡ ವಿಶ್ವವಿದ್ಯಾಲಯದ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದು ಕಾಲಕಾಲಕ್ಕೆ ಸ್ವೀಕರಿಸಬಹುದಾದ ದೇಣಿಗೆಗಳು ಮತ್ತು ಇತರ ನಿಧಿಗಳನ್ನು ಒಳಗೊಂಡಿರತಕ್ಕದ್ದು.

(2) ವಿಶ್ವವಿದ್ಯಾಲಯವು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ವಿಶ್ವವಿದ್ಯಾಲಯದ ದತ್ತಿನಿಧಿಯನ್ನು ಹೂಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯ ದತ್ತಿ ನಿಧಿಯು, ವಿಶ್ವವಿದ್ಯಾಲಯವು ತನ್ನ ಸಾಮಾಜಿಕ ಧ್ಯೇಯೋದ್ದೇಶಗಳನ್ನು ನೆರವೇರಿಸುವ ಸಂದರ್ಭದಲ್ಲಿ ಮತ್ತು/ಅಥವಾ ಮುಂಗಾಣದ ಸನ್ನಿವೇಶದಲ್ಲಿ ಉದ್ಭವಿಸಬಹುದಾದ ಹಣಕಾಸು ಸವಾಲುಗಳಿಂದ ತನ್ನನ್ನು ರಕ್ಷಿಸಿಕೊಳ್ಳುವುದಕ್ಕಾಗಿ, ಸ್ವಇಚ್ಛೆಯಿಂದ ನಿರ್ವಹಿಸಿಕೊಂಡು ಬರಲು ಮತ್ತು ಜವಾಬ್ದಾರಿಯಿಂದ ಹಣ ಹೂಡಿಕೆ ಮಾಡಲು ಇಚ್ಛೆಯುಳ್ಳವರಾಗಿ ಸ್ವಯಂ ವಿಧಿಸಿಕೊಂಡ ನಿಧಿಯಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಗೆ ವರ್ಗಾಯಿಸಬಹುದು. ವಿಶ್ವವಿದ್ಯಾಲಯದ ಸಮಾಪಣೆಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನು ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(5) ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಬರುವ ವರಮಾನದ ಶೇಕಡಾ ಎಂಭತ್ತರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸದ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತರಷ್ಟನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**49. ಸಾಮಾನ್ಯ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಸಾಮಾನ್ಯ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯವು ವಿಧಿಸಬಹುದಾದ ಎಲ್ಲಾ ಶುಲ್ಕಗಳು;

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವುದೇ ಇತರ ಮೂಲದಿಂದ ಸ್ವೀಕರಿಸಲಾದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ದೇಣಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು;

(2) ಸಾಮಾನ್ಯ ನಿಧಿಗೆ ಜಮಾ ಮಾಡುವ ನಿಧಿಗಳನ್ನು ವಿಶ್ವವಿದ್ಯಾಲಯದ ಎಲ್ಲಾ ಆವರ್ತಕ ವೆಚ್ಚಗಳನ್ನು ಭರಿಸಲು ಉಪಯೋಗಿಸಕೊಳ್ಳತಕ್ಕದ್ದು.

**50. ಅಭಿವೃದ್ಧಿ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಅಭಿವೃದ್ಧಿ ನಿಧಿಯನ್ನು ಸಹ ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿದ್ಯಾರ್ಥಿಗಳಿಂದ ವಿಧಿಸಬಹುದಾದ ಅಭಿವೃದ್ಧಿ ಶುಲ್ಕಗಳು;

(ii) ವಿಶ್ವವಿದ್ಯಾಲಯದ ಅಭಿವೃದ್ಧಿಯ ಉದ್ದೇಶಗಳಿಗಾಗಿ ಯಾವುದೇ ಇತರ ಮೂಲಗಳಿಂದ ಸ್ವೀಕರಿಸಿದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ವಂತಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು; ಮತ್ತು

(v) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಲಾದ ಎಲ್ಲಾ ವರಮಾನಗಳು.

(2) ಅಭಿವೃದ್ಧಿ ನಿಧಿಗೆ ಕಾಲಕಾಲಕ್ಕೆ ಜಮಾ ಮಾಡಿದ ನಿಧಿಯನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಉಪಯೋಗಿಸಕೊಳ್ಳತಕ್ಕದ್ದು.

**51. ನಿಧಿಗಳ ನಿರ್ವಹಣೆ.–** 47, 48, 49 ಮತ್ತು 50ನೇ ಪ್ರಕರಣಗಳಡಿಯಲ್ಲಿ ಸ್ಥಾಪಿಸಲಾದ ನಿಧಿಗಳನ್ನು ಪ್ರಬಂಧಕ ಮಂಡಳಿಯ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ನಿಯಂತ್ರಿಸತಕ್ಕದ್ದು ಹಾಗೂ ನಿರ್ವಹಿಸತಕ್ಕದ್ದು.

**52. ವಾರ್ಷಿಕ ವರದಿ.–** (1) ವಿಶ್ವವಿದ್ಯಾಲಯದ ವಾರ್ಷಿಕ ವರದಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ಅದರ ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಪ್ರಬಂಧಕ ಮಂಡಳಿಯು ವಾರ್ಷಿಕ ವರದಿಯನ್ನು ತನ್ನ ಸಭೆಯಲ್ಲಿ ಪರಿಗಣಿಸತಕ್ಕದ್ದು ಹಾಗೂ ಅದನ್ನು ಮಾರ್ಪಾಡುಗಳೊಡನೆ ಅಥವಾ ಮಾರ್ಪಾಡುಗಳಿಲ್ಲದೆ ಅನುಮೋದಿಸಬಹುದು.

(3) ಪ್ರಬಂಧಕ ಮಂಡಳಿಯು ಸೂಕ್ತವಾಗಿ ಅನುಮೋದಿಸಿದ ವಾರ್ಷಿಕ ವರದಿಯ ಒಂದು ಪ್ರತಿಯನ್ನು ಪ್ರತಿವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ಡಿಸೆಂಬರ್ 31ಕ್ಕೆ ಮೊದಲು ಸಂದರ್ಶಕರಿಗೆ ಮತ್ತು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**53. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.–** (1) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕ ಪತ್ರ ಮತ್ತು ಜಮಾ ಖರ್ಚು ಪಟ್ಟಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯಕ್ಕೆ ಎಲ್ಲಾ ಮೂಲಗಳಿಂದ ಪ್ರಾಪ್ತವಾಗುವ ಅಥವಾ ಸ್ವೀಕರಿಸಲಾಗುವ ಎಲ್ಲಾ ನಿಧಿಗಳು ಹಾಗೂ ವಿತರಿಸಿದ ಅಥವಾ ಸಂದಾಯ ಮಾಡಿದ ಎಲ್ಲಾ ಮೊಬಲಗುಗಳನ್ನು ವಿಶ್ವವಿದ್ಯಾಲಯವು ನಿರ್ವಹಿಸುವ ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕಪತ್ರಗಳನ್ನು ಪ್ರತಿ ವರ್ಷವೂ ಭಾರತದ ಚಾರ್ಟೆಡ್ ಅಕೌಟೆಂಟ್‌ಗಳ ಸಂಸ್ಥೆಯ ಸದಸ್ಯರಾಗಿರುವ ಒಬ್ಬ ಲೆಕ್ಕಪರಿಶೋಧಕರಿಂದ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಲೆಕ್ಕಪರಿಶೋಧನಾ ವರದಿಯೊಡನೆ, ಪ್ರತಿ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ನವೆಂಬರ್ 30ಕ್ಕೆ ಮೊದಲು ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(4) ವಾರ್ಷಿಕ ಲೆಕ್ಕಪತ್ರಗಳು, ಜಮಾಖರ್ಚು ಪಟ್ಟಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಪ್ರಬಂಧಕ ಮಂಡಳಿಯು ತನ್ನ ಸಭೆಯಲ್ಲಿ ಪರ್ಯಾಲೋಚಿಸತಕ್ಕದ್ದು ಮತ್ತು ಪ್ರಬಂಧಕ ಮಂಡಳಿಯು ಅದನ್ನು ತನ್ನ ಅಭಿಪ್ರಾಯಗಳೊಡನೆ ಸಂದರ್ಶಕರಿಗೆ ಹಾಗೂ ಸರ್ಕಾರಕ್ಕೆ ಪ್ರತಿ ವರ್ಷದ ಡಿಸೆಂಬರ್ 31ಕ್ಕೆ ಮೊದಲು ಕಳುಹಿಸತಕ್ಕದ್ದು.

(5) ಲೆಕ್ಕಪರಿಶೋಧಕರ ವರದಿಯಲ್ಲಿ ಯಾವುದೇ ಮುಖ್ಯ ಬದಲಾವಣೆ ಇದ್ದ ಸಂದರ್ಭದಲ್ಲಿ, ಅವುಗಳನ್ನು ಸರಿಪಡಿಸಲು, ರಾಜ್ಯ ಸರ್ಕಾರವು ವಿಶ್ವವಿದ್ಯಾಲಯಕ್ಕೆ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಅಂಥ ನಿರ್ದೇಶನಗಳು ವಿಶ್ವವಿದ್ಯಾಲಯದ ಮೇಲೆ ಬಂಧನಕಾರಿಯಾಗಿರತಕ್ಕದ್ದು.

**54. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಮಿತಿಯ ಯಾವುದೇ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ ಅಥವಾ ಗೊತ್ತುವಳಿಯು ಅಥವಾ ವಿಶ್ವವಿದ್ಯಾಲಯದ ಸ್ವಾಧೀನದಲ್ಲಿರುವ ಇತರ ದಾಖಲೆಗಳು ಅಥವಾ ವಿಶ್ವವಿದ್ಯಾಲಯವು ಯುಕ್ತವಾಗಿ ನಿರ್ವಹಿಸುವ ಯಾವುದೇ ರಿಜಿಸ್ಟರ್‌ನಲ್ಲಿಯ ಯಾವುದೇ ನಮೂದುಗಳ ಪ್ರತಿಯನ್ನು, ಅದರ ಮೇಲೆ ಕುಲಸಚಿವರು ಪ್ರಮಾಣೀಕರಿಸಿದ್ದರೆ, ಅದನ್ನು ಅಂಥ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ, ಗೊತ್ತುವಳಿ ಅಥವಾ ದಾಖಲೆ ಅಥವಾ ರಿಜಿಸ್ಟರ್‌ನಲ್ಲಿ ಇರುವ ನಮೂದನ್ನು ಮೇಲ್ನೋಟದ ಸಾಕ್ಷ್ಯವೆಂಬುದಾಗಿ ಸ್ವೀಕರಿಸತಕ್ಕದ್ದು ಮತ್ತು ವಿಷಯಗಳ ಸಾಕ್ಷಿಯಾಗಿ ಅಂಗೀಕರಿಸತಕ್ಕದ್ದು ಹಾಗೂ ಮೂಲ ದಾಖಲೆಗಳನ್ನೇ ಸಲ್ಲಿಸಿದ್ದರೆ ಅದನ್ನು, ದಾಖಲಿಸಿರುವ ವಿಷಯಗಳು ಮತ್ತು ವಹಿವಾಟುಗಳ ಸಾಕ್ಷ್ಯವಾಗಿ ಅಂಗೀಕರಿಸಲಾಗುತ್ತಿತ್ತೋ, ಅದೇ ರೀತಿಯಲ್ಲಿ ಇವನ್ನೂ ಸಾಕ್ಷ್ಯವಾಗಿ ಅಂಗೀಕರಿಸತಕ್ಕದ್ದು.

**55. ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ.–** ರಾಜ್ಯಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಥವಾ ಅದರಲ್ಲಿ ಇರುವ ಯಾವುವೇ ಉಪಬಂಧಗಳನ್ನು ಅಥವಾ ಅದರಡಿಯಲ್ಲಿ ರಚಿಸಿದ ಯಾವುವೇ ನಿಯಮಗಳು ಅಥವಾ ಆದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿರ್ದೇಶನ ನೀಡುವುದು ಅವಶ್ಯವೆಂದು ಅಥವಾ ಉಚಿತವೆಂದು ಅಭಿಪ್ರಾಯಪಟ್ಟಲ್ಲಿ ಅದು ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ ಅಥವಾ ಸಂದರ್ಭಾನುಸಾರವಾಗಿ ವ್ಯವಸ್ಥಾಪನಾ ಮಂಡಳಿಯು ಅಂಥ ಪ್ರತಿಯೊಂದು ನಿರ್ದೇಶನವನ್ನು ಪಾಲಿಸತಕ್ಕದ್ದು.

**56. ದಂಡಗಳು.–** (1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿತವಾದ ನಿಯಮಗಳು ಉಪಬಂಧಗಳನ್ನು ಅಥವಾ ಯಾವುದೇ ಪರೀಕ್ಷಾ ವಿಷಯಗಳನ್ನು ಅಥವಾ ಪದವಿಗಳನ್ನು ನೀಡುವುದಕ್ಕೆ ಅಥವಾ

●ಕಪಟ್ಟಿಗಳನ್ನು ನೀಡುವುದಕ್ಕೆ ಸಂಬಂಧಪಟ್ಟ ವಿಷಯಗಳಲ್ಲಿ ಉಲ್ಲಂಘನೆಗಳನ್ನು ಮಾಡುವ ಯಾವೊಬ್ಬ ವ್ಯಕ್ತಿಯು, ಅಪರಾಧ ನಿರ್ಣಯವಾದ ಮೇಲೆ, ಐವತ್ತು ಸಾವಿರ ರೂಪಾಯಿಗಳಿಗೆ ಕಡಿಮೆಯಲ್ಲದ ಆದರೆ ಹತ್ತು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಆರು ತಿಂಗಳ ಅವಧಿಗಿಂತ ಕಡಿಮೆಯಲ್ಲದ ಆದರೆ ಎರಡು ವರ್ಷಗಳ ಅವಧಿಯವರೆಗೆ ವಿಸ್ತರಿಸಬಹುದಾದ ಕಾರಾವಾಸದಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು:

ಪರಂತು, ಅಪರಾಧವನ್ನು ಎಸಗುವಲ್ಲಿ ವಿಶ್ವವಿದ್ಯಾಲಯವೂ ಸಹ ಒಳಗೊಂಡಿರುವಲ್ಲಿ, ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಈ ಅಧಿನಿಯಮದ ಅಡಿಯಲ್ಲಿ ಮಂಜೂರು ಮಾಡಲಾದ ಅನುಮತಿ ಪತ್ರವನ್ನು ಹಿಂತೆಗೆದುಕೊಳ್ಳತಕ್ಕದ್ದು.

(2) ಈ ಪ್ರಕರಣದ ಅಡಿಯಲ್ಲಿಯ ದಂಡವನ್ನು ಇತರ ಯಾವುದೇ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಲಾದ ದಂಡಕ್ಕೆ ಬಾಧಕವಾಗದಂತೆ ವಿಧಿಸಬಹುದು.

**57. ಪ್ರವೇಶಿಸುವ ಮತ್ತು ಪರಿಶೋಧಿಸುವ ಅಧಿಕಾರ.–** ಈ ಉದ್ದೇಶಕ್ಕಾಗಿ, ರಾಜ್ಯಸರ್ಕಾರದಿಂದ ಪ್ರಾಧಿಕೃತಗೊಂಡ 'ಎ' ಸಮೂಹದ ಅಧಿಕಾರಿ ದರ್ಜೆಗಿಂತ ಕಡಿಮೆಇಲ್ಲದ ದರ್ಜೆಯ ಯಾವೊಬ್ಬ ಅಧಿಕಾರಿಯು, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಶನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ 37) ಅಡಿಯಲ್ಲಿ ನಿರ್ದಿಷ್ಟಪಡಿಸಿರಬಹುದಾದ ಅಂಥ ಷರತ್ತುಗಳಿಗೆ ಒಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ, ಆ ಅಧಿನಿಯಮದ 9ನೇ ಪ್ರಕರಣದ ಅಡಿಯಲ್ಲಿ ಉಪಬಂಧಿಸಲಾದಂತಹವೇ ಅಧಿಕಾರಗಳನ್ನು ಚಲಾಯಿಸಲು ಮತ್ತು ಪ್ರಕಾರ್ಯಗಳನ್ನು ನೆರವೇರಿಸಲು ಅಧಿಕೃತನಾದ ಅಧಿಕಾರಿ ಎಂಬುದಾಗಿ ಭಾವಿಸತಕ್ಕದ್ದು.

**58. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ನಿರ್ದೇಶನವನ್ನು ನೀಡುವ ಅಧಿಕಾರ.–** (1) ವಿಶ್ವವಿದ್ಯಾಲಯವು ತನ್ನ ರಚನೆ ಅಥವಾ ನಿಗಮನವನ್ನು ನಿಯಂತ್ರಿಸುವ ಕಾನೂನಿಗೆ ಅನುಸಾರವಾಗಿ ತನ್ನ ಸಮಾಪನವನ್ನು ಉದ್ದೇಶಿಸಿದ್ದಲ್ಲಿ, ಅದು ಕನಿಷ್ಠ ಆರು ತಿಂಗಳ ಲಿಖಿತ ಪೂರ್ವ ಸೂಚನೆಯನ್ನು (ನೋಟಿಸು) ಸರ್ಕಾರಕ್ಕೆ ನೀಡತಕ್ಕದ್ದು.

(2) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಈ ಕೆಳಗಿನವುಗಳ ಬಗ್ಗೆ, ಎಂದರೆ:–

(i) ಪದವಿಯನ್ನು ನೀಡುವುದಕ್ಕಾಗಿ ಬೋಧನೆಯ ಗುಣಮಟ್ಟ;

(ii) ಶಿಕ್ಷಣದ ಗುಣಮಟ್ಟ;

(iii) ಉನ್ನತ ಶಿಕ್ಷಣದ ವ್ಯಾಪಾರೀಕರಣವನ್ನು ತಡೆಗಟ್ಟುವುದು;

(iv) ಅಧಿನಿಯಮದ ಉಪಬಂಧಗಳ ಉಲ್ಲಂಘನೆಯ ಬಗ್ಗೆ, ಯಾವುದಾದರೂ ಇದ್ದಲ್ಲಿ,

– ಇವುಗಳ ಬಗ್ಗೆ ನಿಯತಕಾಲಿಕ ಪರಿವೀಕ್ಷಣೆಯನ್ನು ನಡೆಸತಕ್ಕದ್ದು ಮತ್ತು ಸರ್ಕಾರಕ್ಕೆ ವರದಿಯನ್ನು ಕಳುಹಿಸತಕ್ಕದ್ದು.

(3) ದುರ್ವ್ಯವಹರಣೆ, ದುರಾಡಳಿತ ಮತ್ತು ಅಶಿಸ್ತು ಆಗಿದೆ ಎಂಬುದನ್ನು ಗುರುತಿಸಿದರೆ, ಸರ್ಕಾರವು, ವಿಶ್ವವಿದ್ಯಾಲಯದ ಆಡಳಿತವರ್ಗದವರಿಗೆ ಆಡಳಿತವನ್ನು ಸರಿಪಡಿಸಬೇಕೆಂದು ನಿರ್ದೇಶನಗಳನ್ನು ನೀಡತಕ್ಕದ್ದು. ನಿಯಮಿಸಬಹುದಾದ ಅಂಥ ಅವಧಿಯೊಳಗೆ ಆ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುವ ಹಕ್ಕು ಸರ್ಕಾರದಲ್ಲಿ ನಿಹಿತವಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ವಿಧಾನವು, ಸರ್ಕಾರವು ಈ ಸಂಬಂಧದಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು:

ಪರಂತು, ವಿಶ್ವವಿದ್ಯಾಲಯವು ತನ್ನ ಕಾರಣಗಳನ್ನು ಹೇಳಿಕೊಳ್ಳಲು ಸಮಂಜಸ ಅವಕಾಶಗಳನ್ನು ನೀಡಿದ ಹೊರತು ಅಂಥ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

(5) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೋಟಿಸನ್ನು ಸ್ವೀಕರಿಸಿದ ಮೇಲೆ, ಸರ್ಕಾರವು ಸಂಬಂಧಿಸಿದ ನಿಯಂತ್ರಣಾ ಪ್ರಾಧಿಕಾರದೊಡನೆ ಸಮಾಲೋಚಿಸಿ, ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ಅಥವಾ ವ್ಯಾಸಂಗ ಕ್ರಮವನ್ನು ಪರಿಸಮಾಪನಗೊಳಿಸಲು ಉದ್ದೇಶಿಸಿದ ದಿನಾಂಕದಿಂದ, ವಿಶ್ವವಿದ್ಯಾಲಯದಲ್ಲಿ ನಿಯತ ವ್ಯಾಸಂಗ ಕ್ರಮಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕೊನೆಯ ತಂಡ (ಬ್ಯಾಚ್) ತನ್ನ ವ್ಯಾಸಂಗ ಕ್ರಮವನ್ನು ಮುಗಿಸುವವರೆಗೆ ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು.

**59. ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು.–** (1) 58ನೇ ಪ್ರಕರಣದ (5)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ಅದರ ಆಡಳಿತಾತ್ಮಕ ವೆಚ್ಚಗಳನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ನೇಮಿಸಬಹುದಾದ ಅಂಥ ವಿಧಾನದಲ್ಲಿ ಭರಿಸತಕ್ಕದ್ದು.

(2) ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ವಿಶ್ವವಿದ್ಯಾಲಯದ ವೆಚ್ಚವನ್ನು ಭರಿಸಲು 47, 48, 49, ಮತ್ತು 50ನೇ ಪ್ರಕರಣಗಳ ಅಡಿಯಲ್ಲಿ ಉಲ್ಲೇಖಿಸಲಾದ ನಿಧಿಯು ಸಾಕಷ್ಟು ಇಲ್ಲದಿದ್ದಲ್ಲಿ, ಅಂಥ ವೆಚ್ಚವನ್ನು ಸರ್ಕಾರವು, ವಿಶ್ವವಿದ್ಯಾಲಯದ ಸ್ವತ್ತುಗಳು ಮತ್ತು ಆಸ್ತಿಗಳನ್ನು ವಿಲೇ ಮಾಡುವ ಮೂಲಕ ಭರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಸಮಾಪನೆಯು ದುರ್ವ್ಯವಹರಣೆ ಅಥವಾ ದುರಾಡಳಿತದ ಕಾರಣಗಳಿಗಾಗಿ ಆಗಿದ್ದರೆ, ಸರ್ಕಾರವು ಅಂಥ ದುರ್ವ್ಯವಹಾರಕ್ಕೆ ಅಥವಾ ದುರಾಡಳಿತಕ್ಕೆ ಹೊಣೆಯಾಗಿರುವ ವ್ಯಕ್ತಿಗಳನ್ನು ಗುರುತಿಸುವ ಮತ್ತು ಅವರ ಮೇಲೆ ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ದಂಡನೆಯನ್ನು ವಿಧಿಸಲು ಸ್ವತಂತ್ರವಾಗಿರತಕ್ಕದ್ದು.

**60. ತೊಂದರೆಗಳ ನಿವಾರಣೆಗೆ ಅಧಿಕಾರ.–** (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಅಥವಾ ಆದೇಶದ ಮೂಲಕ ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಐದು ವರ್ಷಗಳು ಮುಕ್ತಾಯವಾದ ತರುವಾಯ ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಅಧಿಸೂಚನೆ ಅಥವಾ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

**61. ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ.–** (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ಹೊರಡಿಸಲಾದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಉಭಯ ಸದನಗಳು ಒಪ್ಪಿದರೆ ತದನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ದತಿಯು ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವನ್ನು ಉಂಟುಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

**ಜಿ.ಕೆ. ಬೋರೇಗೌಡ**

ಸರ್ಕಾರದ ಕಾರ್ಯದರ್ಶಿ

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಓ7) (500 ಪ್ರತಿಗಳು)

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| | | |
|---|---|---|
| ಭಾಗ - IV-A | ಬೆಂಗಳೂರು, ಸೋಮವಾರ, ಮಾರ್ಚ್ ೪, ೨೦೧೩ (ಫಾಲ್ಗುಣ ೧೩, ಶಕ ವರ್ಷ ೧೯೩೪) | ನಂ. ೫೪೦ |
| Part - IV-A | Bangalore, Monday, March 4, 2013 (Phalguna 13, Shaka Varsha 1934) | No. 540 |


## ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ

## ಅಧಿಸೂಚನೆ

**ಸಂಖ್ಯೆ: ಸಂವ್ಯಶಾಇ 43 ಶಾಸನ 2012, ಬೆಂಗಳೂರು, ದಿನಾಂಕ: 04.03.2013**

ಶ್ರೀ ದೇವರಾಜ್ ಅರಸ್ ವಿಶ್ವವಿದ್ಯಾಲಯ ವಿಧೇಯಕ, 2012– ಇದಕ್ಕೆ 2013ರ ಫೆಬ್ರವರಿ ತಿಂಗಳ ಇಪ್ಪತ್ತೈದನೇ ದಿನಾಂಕದಂದು ಘನತೆವೆತ್ತ ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2013ರ ಕರ್ನಾಟಕ ಅಧಿನಿಯಮ ಸಂಖ್ಯೆ: 23 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2013 ರ ಕರ್ನಾಟಕ ಅಧಿನಿಯಮ ಸಂಖ್ಯೆ: 23**

(2013ರ ಮಾರ್ಚ್ ಮಾಹೆಯ ನಾಲ್ಕನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಶ್ರೀ ದೇವರಾಜ್ ಅರಸ್ ವಿಶ್ವವಿದ್ಯಾಲಯ ಅಧಿನಿಮಯ, 2012**

(2013ರ ಫೆಬ್ರವರಿ ಮಾಹೆಯ ಇಪ್ಪತ್ತೈದನೇ ದಿನಾಂಕದಂದು ರಾಜ್ಯಪಾಲರ ಅನುಮತಿಯನ್ನು ಪಡೆಯಲಾಗಿದೆ)

ಶ್ರೀ ದೇವರಾಜ್ ಅರಸ್ ಶಿಕ್ಷಣ ನ್ಯಾಸವು, ತಾಂತ್ರಿಕ, ಆರೋಗ್ಯ, ವ್ಯವಸ್ಥಾಪನೆ, ಜೀವ ವಿಜ್ಞಾನಗಳು ಮತ್ತು ತತ್ಸಂಬಂಧಿ ವಲಯಗಳಲ್ಲಿ ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಉತ್ತೇಜಿಸಲು ಮತ್ತು ಕೈಗೊಳ್ಳಲು ಹಾಗೂ ಏಕಾತ್ಮಕವಾಗಿ ಬೋಧಿಸಲು ಮತ್ತು ನಿವಾಸ ವಿಶ್ವವಿದ್ಯಾಲಯದಂತೆ ಕಾರ್ಯ ನಿರ್ವಹಿಸುವುದಕ್ಕೆ ಉಪಬಂಧ ಕಲ್ಪಿಸಲು ಖಾಸಗಿ ವಲಯದಲ್ಲಿ ಏಕಾತ್ಮಕ ಸ್ವರೂಪದ ಒಂದು ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದಕ್ಕಾಗಿ ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಶ್ರೀ ದೇವರಾಜ್ ಅರಸ್ ಶಿಕ್ಷಣ ನ್ಯಾಸವು, ತಾಂತ್ರಿಕ, ಆರೋಗ್ಯ, ವ್ಯವಸ್ಥಾಪನೆ, ಜೀವ ವಿಜ್ಞಾನಗಳು ಮತ್ತು ತತ್ಸಂಬಂಧಿ ವಲಯಗಳಲ್ಲಿ ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಉತ್ತೇಜಿಸಲು ಮತ್ತು ಕೈಗೊಳ್ಳಲು ಹಾಗೂ ಏಕಾತ್ಮಕವಾಗಿ ಬೋಧಿಸಲು ಮತ್ತು ನಿವಾಸ ವಿಶ್ವವಿದ್ಯಾಲಯದಂತೆ ಕಾರ್ಯ ನಿರ್ವಹಿಸುವುದಕ್ಕೆ ಉಪಬಂಧ ಕಲ್ಪಿಸಲು ಖಾಸಗಿ ವಲಯದಲ್ಲಿ ಏಕಾತ್ಮಕ ಸ್ವರೂಪದ ಒಂದು ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೂರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

## ಅಧ್ಯಾಯ – I

### ಪ್ರಾರಂಭಿಕ

1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.- (1) ಈ ಅಧಿನಿಯಮವನ್ನು ಶ್ರೀ ದೇವರಾಜ್ ಅರಸ್ ವಿಶ್ವವಿದ್ಯಾಲಯ ಅಧಿನಿಯಮ, 2012 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. ಪರಿಭಾಷೆಗಳು.-** ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) "ಶೈಕ್ಷಣಿಕ ಪರಿಷತ್ತು (ಅಕೆಡೆಮಿಕ್ ಕೌನ್ಸಿಲ್)" ಎಂದರೆ, 25ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿಸಲಾದ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು;

(ಬಿ) "ಕಾರ್ಯಸೂಚಿ ವಿಷಯಗಳು", ಎಂದರೆ, ಪರಿನಿಯಮಗಳಲ್ಲಿ ಹೆಸರಿಸಬಹುದಾದ ಮತ್ತು ಒಂದು ಸಭೆಯಲ್ಲಿ ಆ ವಿಷಯಗಳನ್ನು ಮತ್ತು ಕಲಾಪಗಳನ್ನು ಅನುಮೋದಿಸಬಹುದೆಂದು ತಮ್ಮ ಸಮ್ಮತಿ ಸೂಚಿಸಿ ಕುಲಾಧಿಪತಿಯವರು ಮುಂಚಿತವಾಗಿಯೇ ಲಿಖಿತ ಅನುಮೋದನೆಯನ್ನು ಕೊಟ್ಟಿದ್ದಾಗ ಮಾತ್ರವೇ ಸಂದರ್ಭಾನುಸಾರ ಪ್ರಬಂಧಕರ ಮಂಡಳಿ ಅಥವಾ ವ್ಯವಸ್ಥಾಪನಾ ಮಂಡಳಿ ಅಥವಾ ಯಾವುದೇ ಸಮಿತಿಯವರು ಕಾರ್ಯಸೂಚಿಯಲ್ಲಿ ಸೇರಿಸಬಹುದಾದ ಅಥವಾ ಸಭೆಯಲ್ಲಿ ಚರ್ಚೆಗೆ ತೆಗೆದುಕೊಂಡು ನಿರ್ಣಯವನ್ನು ಕೊಡಬಹುದಾದ ಎಲ್ಲಾ ವಿಷಯಗಳು ಮತ್ತು ಕಲಾಪಗಳು;

(ಸಿ) "ಪ್ರಬಂಧಕರ ಮಂಡಳಿ" ಎಂದರೆ, 23ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಪ್ರಬಂಧಕರ ಮಂಡಳಿ;

(ಡಿ) "ವ್ಯವಸ್ಥಾಪನಾ ಮಂಡಳಿ" ಎಂದರೆ, 24ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಆಡಳಿತ ಮಂಡಳಿ;

(ಇ) "ಕುಲಾಧಿಪತಿ", "ಕುಲಪತಿ", "ಸಹಕುಲಪತಿ" ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ ಮತ್ತು ಸಹಕುಲಪತಿ;

(ಎಫ್) "ಕ್ಯಾಂಪಸ್" ಎಂದರೆ, ಅದು ಎಲ್ಲಾದರೂ ಇರಲಿ ವಿಶ್ವವಿದ್ಯಾಲಯವು ಸ್ಥಾಪಿಸಿದ, ನಿರ್ವಹಿಸುವ ಒಂದು ಕ್ಯಾಂಪಸ್;

(ಜಿ) "ಸಮಿತಿಗಳು" ಎಂದರೆ, ಈ ಅಧಿನಿಯಮದಡಿಯಲ್ಲಿ ರೂಪಿಸಲಾದ ಸಮಿತಿಗಳು ಅಥವಾ ಸಂದರ್ಭಾನುಸಾರವಾಗಿ ವಿಶ್ವವಿದ್ಯಾಲಯದ ವಿವಿಧ ಕಾರ್ಯಕರ್ತರು ರಚಿಸಿರುವ ಸಮಿತಿಗಳು ಮತ್ತು ಅದರಲ್ಲಿ ನಾಮನಿರ್ದೇಶನ ಸಮಿತಿ, ಹಣಕಾಸು ಸಮಿತಿ, ಮತ್ತು ಅಂಥ ಇತರ ಸಮಿತಿಗಳು ಒಳಗೊಳ್ಳುತ್ತವೆ;

(ಎಚ್) "ಘಟಕ ಕಾಲೇಜು" ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುತ್ತಿರುವ ಒಂದು ಕಾಲೇಜು ಅಥವಾ ಸಂಸ್ಥೆ;

(ಐ) "ಹಣಕಾಸು ಸಮಿತಿ" ಎಂದರೆ, 27ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಹಣಕಾಸು ಸಮಿತಿ;

(ಜೆ) "ಸರ್ಕಾರ" ಎಂದರೆ, ಕರ್ನಾಟಕ ಸರ್ಕಾರ;

(ಕೆ) "ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳು" ಎಂದರೆ, ವಿಶ್ವವಿದ್ಯಾಲಯ ಅನುದಾನ ಆಯೋಗ, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು, ಭಾರತೀಯ ವೈದ್ಯಕೀಯ ಪರಿಷತ್ತು, ಭಾರತೀಯ ಔಷಧ ವಿಜ್ಞಾನ ಪರಿಷತ್ತು, ಭಾರತೀಯ ಕೃಷಿ ಸಂಶೋಧನಾ ಪರಿಷತ್ತು, ರಾಷ್ಟ್ರೀಯ ಮೌಲ್ಯಮಾಪನ ಮತ್ತು ಅಧಿಮಾನ್ಯತಾ ಪರಿಷತ್ತು, ರಾಷ್ಟ್ರೀಯ ಬೋಧಕ ಶಿಕ್ಷಣ ಪರಿಷತ್ತು, ದೂರಶಿಕ್ಷಣ ಪರಿಷತ್ತು, ವೈಜ್ಞಾನಿಕ ಮತ್ತು ಭಾರತೀಯ ಸಂಶೋಧನಾ ಪರಿಷತ್ತು ಮುಂತಾದವುಗಳು, ಉನ್ನತ ಶಿಕ್ಷಣದಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುವಂತೆ ನೋಡಿಕೊಳ್ಳುವುದಕ್ಕಾಗಿ ಗುಣಮಟ್ಟಗಳು ಮತ್ತು ಷರತ್ತುಗಳನ್ನು ವಿಧಿಸುವುದಕ್ಕಾಗಿ, ಕೇಂದ್ರ ಸರ್ಕಾರವು ಸ್ಥಾಪಿಸಿರುವ ಒಂದು ಸಂಸ್ಥೆ ಮತ್ತು ಇದರಲ್ಲಿ ಸರ್ಕಾರವೂ ಸೇರಿರುತ್ತದೆ;

(ಎಲ್) "ನಿಯಮಿಸಲಾದುದು" ಎಂದರೆ, ಈ ಅಧಿನಿಯಮದಡಿಯಲ್ಲಿ ಸರ್ಕಾರವು ರಚಿಸಲಾದ ನಿಯಮಗಳ ಮೂಲಕ ನಿಯಮಿಸಲಾದುದು;

(ಎಂ) "ಒಂದು ಘಟಕ ಕಾಲೇಜಿಗೆ ಸಂಬಂಧಪಟ್ಟಂತೆ ಪ್ರಾಂಶುಪಾಲರು" ಎಂದರೆ, ಘಟಕ ಕಾಲೇಜಿನ ಮುಖ್ಯಸ್ಥರು ಮತ್ತು ಪ್ರಾಂಶುಪಾಲರು ಇಲ್ಲದಿದ್ದಲ್ಲಿ ಅಥವಾ ನೇಮಕವಾದ ಪ್ರಾಂಶುಪಾಲರ ಗೈರುಹಾಜರಿಯಲ್ಲಿ, ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ತಾತ್ಕಾಲಿಕವಾಗಿ ನೇಮಕಗೊಂಡಿರುವ ಉಪಪ್ರಾಂಶುಪಾಲರು ಅಥವಾ ಯಾವುದೇ ಇತರ ವ್ಯಕ್ತಿಯೂ ಇದರಲ್ಲಿ ಒಳಗೊಳ್ಳುತ್ತಾರೆ;

(ಎನ್) "ಕುಲಸಚಿವರು" ಎಂದರೆ, ವಿಶ್ವವಿದ್ಯಾಲಯದ ಕುಲಸಚಿವರು;

(ಒ) "ಪ್ರಾದೇಶಿಕ ಕೇಂದ್ರ" ಎಂದರೆ, ಯಾವುದೇ ಪ್ರದೇಶದಲ್ಲಿನ ಅಧ್ಯಯನ ಕೇಂದ್ರಗಳ ಕಾರ್ಯವನ್ನು ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ಮಾಡುವ ಉದ್ದೇಶಕ್ಕಾಗಿ ಮತ್ತು ಅಂಥ ಕೇಂದ್ರಕ್ಕೆ ವ್ಯವಸ್ಥಾಪನಾ ಮಂಡಳಿಯು ವಹಿಸಿಕೊಡಬಹುದಾದ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸುವುದಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಅಥವಾ ನಿರ್ವಹಿಸಿಕೊಂಡುಬರುವ ಒಂದು ಕೇಂದ್ರ;

(ಪಿ) ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ "ಪ್ರಾಯೋಜಕ ಪ್ರಾಧಿಕಾರ" ಅಥವಾ "ಪ್ರಾಯೋಜಕ ಸಂಸ್ಥೆ" ಎಂದರೆ, ನ್ಯಾಸ;

(ಕ್ಯೂ) "ರಾಜ್ಯ" ಎಂದರೆ, ಕರ್ನಾಟಕ ರಾಜ್ಯ;

(ಆರ್) "ಪರಿನಿಯಮಗಳು" ಮತ್ತು "ವಿನಿಯಮಗಳು" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಅನುಕ್ರಮವಾಗಿ ವಿಶ್ವವಿದ್ಯಾಲಯದ ಪರಿನಿಯಮಗಳು ಮತ್ತು ವಿನಿಯಮಗಳು;

(ಎಸ್) "ಅಧ್ಯಯನ ಕೇಂದ್ರ" ಎಂದರೆ, ಶಿಕ್ಷಣದ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಅಗತ್ಯವಾದ ಬುದ್ಧಿವಾದ, ಸಲಹೆಗಳನ್ನು ನೀಡುವ ಅಥವಾ ಇತರ ಯಾವುದೇ ನೆರವನ್ನು ನೀಡುವ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಮತ್ತು ನಿರ್ವಹಿಸಿಕೊಂಡುಬಂದ ಒಂದು ಕೇಂದ್ರ;

(ಟಿ) "ಅಧ್ಯಾಪಕರು" ಎಂದರೆ, ಒಬ್ಬ ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಅಥವಾ ಅಧ್ಯಾಪಕರು ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಒಂದು ಘಟಕ ಕಾಲೇಜಿನಲ್ಲಿ ಬೋಧಿಸುವುದಕ್ಕೆ ಅಥವಾ ಸಂಶೋಧನೆ ನಡೆಸುವುದಕ್ಕೆ ಅಥವಾ ಸಂಶೋಧನೆಗೆ ಮಾರ್ಗದರ್ಶನ ನೀಡುವುದಕ್ಕೆ ನೇಮಕವಾದ ಅಂಥ ಇತರ ವ್ಯಕ್ತಿ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗವು ನಿಯಮಿಸಿದ ಗುಣಮಟ್ಟಗಳಿಗೆ ಅನುಸಾರವಾಗಿ ಇರುವ ಘಟಕ ಕಾಲೇಜಿನ ಪ್ರಾಂಶುಪಾಲರು ಇದರಲ್ಲಿ ಒಳಗೊಳ್ಳುತ್ತಾರೆ;

(ಯು) "ನ್ಯಾಸ" ಎಂದರೆ ನೋಂದಾಯಿತ ನ್ಯಾಸವಾದ ಹಿಂದುಳಿದ ವರ್ಗಗಳ ಶ್ರೀ ದೇವರಾಜ್ ಅರಸ್ ಶಿಕ್ಷಣ ನ್ಯಾಸ, ತಮಕ, ಕೋಲಾರ ತಾಲ್ಲೂಕು, ಕೋಲಾರ ಜಿಲ್ಲೆ;

(ವಿ) "ವಿಶ್ವವಿದ್ಯಾಲಯ ಅನುದಾನಗಳ ಆಯೋಗ" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) 4ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ಆಯೋಗ;

(ಡಬ್ಲ್ಯೂ) "ವಿಶ್ವವಿದ್ಯಾಲಯ" ಎಂದರೆ, ಈ ಅಧಿನಿಯಮದಡಿಯಲ್ಲಿ ಸ್ಥಾಪಿಸಿ ನಿಗಮಿತ ಗೊಳಿಸಲಾದ ಶ್ರೀ ದೇವರಾಜ್ ಅರಸ್ ವಿಶ್ವವಿದ್ಯಾಲಯ;

(ಎಕ್ಸ್) "ಸಂದರ್ಶಕರು" ಎಂದರೆ, 13ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ವಿಶ್ವವಿದ್ಯಾಲಯದ ಸಂದರ್ಶಕರು.

## ಅಧ್ಯಾಯ– II

## ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

**3. ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ.**– (1) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಹಕ್ಕನ್ನು ನ್ಯಾಸವು ಹೊಂದಿರತಕ್ಕದ್ದು.

(2) ನ್ಯಾಸವು ರಾಜ್ಯ ಸರ್ಕಾರಕ್ಕೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವವನ್ನು ಸಲ್ಲಿಸತಕ್ಕದ್ದು.

(3) ಈ ಮುಂದಿನ ವಿವರಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ನ್ಯಾಸವು ವಿವರಗಳೊಂದಿಗೆ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು;

(ii) ವಿಶ್ವವಿದ್ಯಾಲಯದ ವ್ಯಾಪ್ತಿ ಮತ್ತು ಸ್ಥಾನಮಾನ ಹಾಗೂ ಭೂಮಿಯ ಲಭ್ಯತೆ;

(iii) ಪ್ರಾರಂಭದ ದಿನಾಂಕದಿಂದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳಬೇಕೆಂದಿರುವ ಅಧ್ಯಯನ ಮತ್ತು ಸಂಶೋಧನಾ ಕಾರ್ಯಕ್ರಮಗಳ ಸ್ವರೂಪ ಮತ್ತು ಬಗೆಗಳು;

(iv) ಪ್ರಾರಂಭಿಸಬೇಕೆಂದು ಪ್ರಸ್ತಾಪಿಸಿರುವ ವ್ಯಾಸಂಗ ವಿಭಾಗಗಳು (ಫ್ಯಾಕಲ್ಟಿಗಳು), ಅಧ್ಯಯನ ಕ್ರಮಗಳು ಮತ್ತು ಸಂಶೋಧನೆಗಳ ಸ್ವರೂಪ;

(v) ಕಟ್ಟಡಗಳು, ಸಲಕರಣೆಗಳು ಮತ್ತು ರಚನಾ ಸೌಕರ್ಯಗಳನ್ನು ಒದಗಿಸುವಂಥ ಕ್ಯಾಂಪಸ್ ಅಭಿವೃದ್ಧಿ;

(vi) ಪ್ರಾರಂಭದ ದಿನಾಂಕದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಗಾಗಿ ಬಂಡವಾಳ ವೆಚ್ಚದ ಹಂತಗಳು;

(vii) ಬಾಬುವಾರು ಆವರ್ತಕ ವೆಚ್ಚ, ಆರ್ಥಿಕ ಮೂಲಗಳು ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ತಗಲುವ ಅಂದಾಜು ವೆಚ್ಚ;

(viii) ಸಂಪನ್ಮೂಲ ಸಂಗ್ರಹಣೆಗಾಗಿ ಯೋಜನೆ ಮತ್ತು ಅದಕ್ಕೆ ಬಂಡವಾಳದಿಂದ ತಗಲುವ ವೆಚ್ಚ ಹಾಗೂ ಪ್ರತಿಯೊಂದು ಮೂಲಕ್ಕೂ ಮರು ಸಂದಾಯ ಮಾಡುವ ರೀತಿ;

(ix) ವಿದ್ಯಾರ್ಥಿಗಳಿಂದ ಶುಲ್ಕ ವಸೂಲು ಮಾಡಿ ಆಂತರಿಕವಾಗಿ ನಿಧಿ ಸಂಗ್ರಹಿಸುವ ಯೋಜನೆ, ಸಲಹಾ ಸೇವೆ ಮತ್ತು ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಿಗೆ ಸಂಬಂಧಿಸಿದ ಇತರ ಚಟುವಟಿಕೆಗಳಿಂದ ನಿರೀಕ್ಷಿತ ವರಮಾನಗಳು ಮತ್ತು ಇತರ ನಿರೀಕ್ಷಿತ ವರಮಾನಗಳು;

(x) ಘಟಕವೊಂದಕ್ಕೆ ತಗಲುವ ವೆಚ್ಚದ ವಿವರಗಳು, ಆರ್ಥಿಕವಾಗಿ ದುರ್ಬಲವಾದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕ, ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿ ವೇತನದಲ್ಲಿ ನೀಡುವ ರಿಯಾಯಿತಿ ಅಥವಾ ವಿನಾಯತಿಯ ಪರಿಮಿತಿಯ ವಿವರಗಳನ್ನು ಮತ್ತು ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳಿಗೆ ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳು ಪ್ರಾಯೋಜಿಸಿದ ವಿದ್ಯಾರ್ಥಿಗಳಿಗೆ ಮತ್ತು ಭಾರತವನ್ನುಳಿದು ಇತರ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ವಿಧಿಸತಕ್ಕ ಶುಲ್ಕದ ದರಗಳು ಬೇರೆ ಬೇರೆ ಇದ್ದಲ್ಲಿ ಅವುಗಳನ್ನು ಸೂಚಿಸುವ ಶುಲ್ಕ ರಚನೆಯ ವಿವರಗಳು;

(xi) ಸಂಬಂಧಪಟ್ಟ ವಿದ್ಯಾ ವಿಭಾಗದಲ್ಲಿ ಎಷ್ಟು ವರ್ಷಗಳ ಅನುಭವ ಮತ್ತು ಪರಿಣಿತಿಯನ್ನು ನ್ಯಾಸವು ದೊರಕಿಸಿಕೊಡಲಿದೆ ಹಾಗೂ ಅದರ ಹಣಕಾಸಿನ ಸಂಪನ್ಮೂಲಗಳು;

(xii) ವಿಶ್ವವಿದ್ಯಾಲಯದಲ್ಲಿರುವ ಅಧ್ಯಯನ ಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕಾಗಿ ಇರುವ ವ್ಯವಸ್ಥೆ;

(xiii) ವಿಶ್ವವಿದ್ಯಾಲಯವು ಸ್ಥಾಪನೆಯಾಗುವುದಕ್ಕೆ ಮೊದಲು ನೆರವೇರಿಸಬೇಕೆಂದು ರಾಜ್ಯ ಸರ್ಕಾರವು ಅಗತ್ಯಪಡಿಸಬಹುದಾದ ಅಂಥ ಇತರ ಷರತ್ತುಗಳ ನೆರವೇರಿಕೆಯ ಹಂತ.

(4) ಸ್ವೀಕರಿಸಿದ ಪ್ರಸ್ತಾವಗಳನ್ನು ಪರೀಕ್ಷಿಸಲು ರಾಜ್ಯ ಸರ್ಕಾರವು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಪದನಿಮಿತ್ತ ಸದಸ್ಯರಾದ ಮೂರು ಸದಸ್ಯರುಗಳನ್ನು ಒಳಗೊಂಡ ಒಂದು ಪರಿಶೋಧನಾ ಸಮಿತಿಯನ್ನು ರಚಿಸತಕ್ಕದ್ದು ಮತ್ತು ಅದು ರಾಜ್ಯ ಸರ್ಕಾರಕ್ಕೆ ಶಿಫಾರಸ್ಸನ್ನು ಮಾಡತಕ್ಕದ್ದು.

4. ವಿಶ್ವವಿದ್ಯಾಲಯದ ಸ್ಥಾಪನೆ.– (1) ರಾಜ್ಯ ಸರ್ಕಾರವು ಪರಿಶೋಧನಾ ಸಮಿತಿಯು ಮಾಡಿದ ಶಿಫಾರಸ್ಸುಗಳನ್ನು ಪರಿಶೀಲಿಸಿದ ತರುವಾಯ ಮತ್ತು ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ,–

(i) ನ್ಯಾಸವು ಸಾಕಷ್ಟು ಮೂಲ ಸೌಕರ್ಯದೊಂದಿಗೆ ವಿಶ್ವವಿದ್ಯಾಲಯವೊಂದನ್ನು ನಡೆಸಲು ಸಮರ್ಥವಾಗಿದೆ ಎಂದು ಅದು ಮನಗಂಡರೆ;

(ii) ಪ್ರದೇಶಕ್ಕನುಸಾರವಾಗಿ ಕೆಳಗೆ ನಿರ್ದಿಷ್ಟ ಪಡಿಸಿದ ವ್ಯಾಪ್ತಿಗೆ ಭೂಮಿಯ ಒಡೆತನವನ್ನು ಹೊಂದಿರತಕ್ಕದ್ದು, ಎಂದರೆ:–

(ಎ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯೊಳಗಿದ್ದರೆ ಇಪ್ಪತ್ತೈದು ಎಕರೆಗಳು;

(ಬಿ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮಿತಿಯಿಂದ ಹೊರಗೆ ಇದ್ದು, ಆದರೆ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಪ್ರದೇಶದ ಒಳಗೆ ಇದ್ದರೆ ನಲವತ್ತು ಎಕರೆಗಳು;

(ಸಿ) ಭೂಮಿಯು (ಎ) ಮತ್ತು (ಬಿ) ಖಂಡಗಳಲ್ಲಿ ನಿರ್ದಿಷ್ಟಪಡಿಸಿದ ಸ್ಥಳಗಳನ್ನು ಹೊರತುಪಡಿಸಿದ್ದರೆ ಅರವತ್ತು ಎಕರೆಗಳಿಗಿಂತ ಕಡಿಮೆ ಇರತಕ್ಕದ್ದಲ್ಲ.

ಮೇಲೆ ನಿರ್ದಿಷ್ಟಪಡಿಸಿದ ಭೂಮಿಯು ಏಕ ಘಟಕ (ಸಿಂಗಲ್ ಬ್ಲಾಕ್) ದಲ್ಲಿರತಕ್ಕದ್ದು ಮತ್ತು ಇದು ಸಂಬಂಧಪಟ್ಟ ನ್ಯಾಸ/ ಪ್ರತಿಷ್ಠಾನ / ಸಂಸ್ಥೆ / ವಿಶ್ವವಿದ್ಯಾಲಯದ ಹೆಸರಿನಲ್ಲಿರತಕ್ಕದ್ದು. 3ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ಅಗತ್ಯಪಡಿಸಲಾದಂತೆ ನ್ಯಾಸವು ಒದಗಿಸಿದ ವಿವರಗಳ ಆಧಾರದ ಮೇಲೆ ಸರ್ಕಾರವು 47ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಬೇಕೆಂದು ನ್ಯಾಸಕ್ಕೆ ನಿರ್ದೇಶನ ನೀಡಬಹುದು.

(2) ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಸ್ಥಾಪನೆಯ ತರುವಾಯ, ರಾಜ್ಯ ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, "ಶ್ರೀ ದೇವರಾಜ್ ಅರಸ್ ವಿಶ್ವವಿದ್ಯಾಲಯ" ಎಂಬ ಹೆಸರಿನ ಏಕಾತ್ಮಕ ಸ್ವರೂಪದ ಒಂದು ವಿಶ್ವವಿದ್ಯಾಲಯವನ್ನು ರಾಜ್ಯದಲ್ಲಿ ಸ್ಥಾಪಿಸುವುದಕ್ಕೆ ಮಂಜೂರಾತಿಯನ್ನು ನೀಡಬಹುದು.

(3) ವಿಶ್ವವಿದ್ಯಾಲಯದ ಕೇಂದ್ರ ಕಾರ್ಯಸ್ಥಾನವು ಬೆಂಗಳೂರಿನಲ್ಲಿ ಇರತಕ್ಕದ್ದು. ವಿಶ್ವವಿದ್ಯಾಲಯವು ತನ್ನ ಕ್ಯಾಂಪಸ್ಸುಗಳನ್ನು ಅಥವಾ ಪ್ರಾದೇಶಿಕ ಕೇಂದ್ರಗಳನ್ನು, ಅಧ್ಯಯನ ಕೇಂದ್ರಗಳನ್ನು ಕರ್ನಾಟಕದ ಯಾವುದೇ ಭಾಗದಲ್ಲಿ ಹೊಂದಿರತಕ್ಕದ್ದು ಮತ್ತು ಆ ಬಗ್ಗೆ ರಾಜ್ಯ ಸರ್ಕಾರದ ಪೂರ್ವಾನುಮತಿಯನ್ನು ಪಡೆದುಕೊಳ್ಳುವುದಕ್ಕೊಳಪಟ್ಟು ಹಾಗೂ ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗನುಸಾರವಾಗಿ ಹೊಂದಿರತಕ್ಕದ್ದು.

(4) ಮೊದಲ ಕುಲಾಧಿಪತಿಯವರು, ಮೊದಲ ಕುಲಪತಿಯವರು, ಪ್ರಬಂಧಕ ಮಂಡಳಿಯ ಮೊದಲ ಸದಸ್ಯರುಗಳು, ವ್ಯವಸ್ಥಾಪನಾ ಮಂಡಳಿಯ ಹಾಗೂ ಶೈಕ್ಷಣಿಕ ಪರಿಷತ್ತಿನ ಮೊದಲ ಸದಸ್ಯರುಗಳು ಮತ್ತು ಇನ್ನು ಮುಂದೆ, ಅಂಥ ಅಧಿಕಾರಿಗಳು ಅಥವಾ ಸದಸ್ಯರುಗಳಾಗಬಹುದಾದಂಥ ಎಲ್ಲಾ ವ್ಯಕ್ತಿಗಳು, ಅಂಥ ಪದ ಅಥವಾ ಸದಸ್ಯತ್ವವನ್ನು ಹೊಂದಿರುವುದು ಮುಂದುವರೆಯುವವರೆಗೆ, ಒಂದು ನಿಗಮಿತ ನಿಕಾಯವನ್ನು ರಚಿಸತಕ್ಕದ್ದು. ಮತ್ತು ಅದು ವಿಶ್ವವಿದ್ಯಾಲಯದ ಹೆಸರಿನಲ್ಲಿ ದಾವೆ ಹೂಡಬಹುದು ಮತ್ತು ದಾವೆಗೊಳಗಾಗಬಹುದು.

(5) (2)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯವು ಸ್ಥಾಪನೆಗೆ ಮಂಜೂರಾತಿಯಾದ ಮೇಲೆ, ವಿಶ್ವವಿದ್ಯಾಲಯದ ಉದ್ದೇಶಕ್ಕಾಗಿ, ನ್ಯಾಸವು ಆರ್ಜಿಸಿದ, ಸೃಜಿಸಿದ, ಏರ್ಪಾಟು ಮಾಡಿಕೊಂಡ ಅಥವಾ ಕಟ್ಟಲ್ಪಟ್ಟ ಭೂಮಿ ಮತ್ತು ಇತರ ಸ್ಥಿರ ಮತ್ತು ಚರ ಸ್ವತ್ತು, ವಿಶ್ವವಿದ್ಯಾಲಯದಲ್ಲಿ ನಿಹಿತವಾಗಿರತಕ್ಕದ್ದು.

(6) ವಿಶ್ವವಿದ್ಯಾಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದ ಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂಥ ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

(7) ವಿಶ್ವವಿದ್ಯಾಲಯದಲ್ಲಿನ ಭೂಮಿ, ಕಟ್ಟಡ ಮತ್ತು ಇತರ ಸ್ವತ್ತುಗಳನ್ನು ವಿಶ್ವವಿದ್ಯಾಲಯದ ಉದ್ದೇಶಗಳಿಗೆ ಆನುಷಂಗಿಕವಾಗಿರುವುದನ್ನು ಹೊರತುಪಡಿಸಿ ಇತರ ಯಾವುದೇ ಉದ್ದೇಶಕ್ಕಾಗಿ ಬಳಸತಕ್ಕದ್ದಲ್ಲ.

5. **ಅನುದಾನಗಳು ಮತ್ತು ಹಣಕಾಸು ನೆರವು.**– ವಿಶ್ವವಿದ್ಯಾಲಯವು ಸ್ವಂತ ಧನಮೂಲ ಉಳ್ಳದ್ದಾಗಿರತಕ್ಕದ್ದು ಮತ್ತು ರಾಜ್ಯದಿಂದ ಅಥವಾ ರಾಜ್ಯದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಇತರ ಸಂಸ್ಥೆ ಅಥವಾ ನಿಗಮದಿಂದ ಯಾವುದೇ ನಿರ್ವಹಣಾ ಸಹಾಯ ಅನುದಾನ ಅಥವಾ ಯಾವುದೇ ಹಣಕಾಸು ನೆರವನ್ನು ಹಕ್ಕಿನಿಂದ ಕೇಳತಕ್ಕದ್ದಲ್ಲ ಅಥವಾ ಅದನ್ನು ಪಡೆಯಲು ಹಕ್ಕನ್ನು ಹೊಂದಿರತಕ್ಕದ್ದಲ್ಲ:

ಪರಂತು, ರಾಜ್ಯವು,–

(ಎ) ಇತರ ರಾಜ್ಯ ಸರ್ಕಾರದ ಸಂಘಟನೆಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿರುವಂಥದ್ದೇ ಸಂಶೋಧನೆ, ಅಭಿವೃದ್ಧಿ ಮತ್ತಿತರ ಚಟುವಟಿಕೆಗಳಿಗಾಗಿ; ಅಥವಾ

(ಬಿ) ಸರ್ಕಾರದಿಂದ ನೆರವನ್ನು ಪಡೆಯುವ ಯಾವುದೇ ನಿರ್ದಿಷ್ಟ ಸಂಶೋಧನೆ ಅಥವಾ ಕಾರ್ಯಕ್ರಮಗಳಿಗಾಗಿ; ಮತ್ತು

(ಸಿ) ರಾಜ್ಯ ಕಾರ್ಯನೀತಿಯ ಬದಲಾವಣೆಗೆ ಒಳಪಟ್ಟು ಅಥವಾ ಅನ್ಯಥಾ ಇದೇ ಬಗೆಯ ವಿಶ್ವವಿದ್ಯಾಲಯಗಳಿಗಾಗಿ ಅಥವಾ ಅವುಗಳ ಪ್ರಯೋಜನಕ್ಕಾಗಿ,

-ಅನುದಾನದ ಮೂಲಕ ಅಥವಾ ಅನ್ಯಥಾ ಹಣಕಾಸು ಬೆಂಬಲವನ್ನು ಒದಗಿಸಬಹುದು:

ಮತ್ತು ಪರಂತು, ವಿಶ್ವವಿದ್ಯಾಲಯವು, ಯಾವುದೇ ಇತರ ಮೂಲದಿಂದ ಯಾವುದೇ ಆರ್ಥಿಕ ನೆರವನ್ನು ಸ್ವೀಕರಿಸಬಹುದು.

6. **ಘಟಕ ಕಾಲೇಜು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಅಥವಾ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದಕ್ಕೆ ಅಧಿಕಾರ.**- ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಐದು ವರ್ಷಗಳನ್ನು ಪೂರ್ಣಗೊಳಿಸಿದ ನಂತರ ವಿಶ್ವವಿದ್ಯಾಲಯ ಅನುದಾನ ಆಯೋಗದ ಮತ್ತು ಇತರ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ಗುಣಮಟ್ಟಗಳಿಗೆ ಒಳಪಟ್ಟು, ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ವಿಶ್ವವಿದ್ಯಾಲಯವು, ರಾಜ್ಯದಲ್ಲಿ ತನಗೆ ಸೂಕ್ತವೆನಿಸುವಂಥ ಸ್ಥಳಗಳಲ್ಲಿ ಘಟಕ ಕಾಲೇಜುಗಳು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದಿರಬಹುದು.

7. **ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು.**- ವಿಶ್ವವಿದ್ಯಾಲಯವು, ತನ್ನ ಭವಿಷ್ಯದ್‌ದೃಷ್ಟಿ ಮತ್ತು ಧ್ಯೇಯೋದ್ದೇಶಗಳನ್ನು ಸಾಧಿಸಲು ಈ ಮುಂದಿನ ವಿಸ್ತೃತ ಕಾರ್ಯತಂತ್ರಗಳನ್ನು ಕೈಗೊಳ್ಳಬಹುದು:-

(i) ತಾಂತ್ರಿಕ ಶಿಕ್ಷಣ, ಹಣಕಾಸು, ವ್ಯವಸ್ಥಾಪನೆ, ಬೋಧನೆ-ಕಲಿಕೆ, ವೃತ್ತಿ ಶಿಕ್ಷಣದಲ್ಲಿಯ ತಾಂತ್ರಿಕತೆ, ವೈದ್ಯಕೀಯ, ದಂತವೈದ್ಯಕೀಯ, ಔಷಧಶಾಸ್ತ್ರ, ನರ್ಸಿಂಗ್, ತತ್ಸಂಬಂಧಿ ಆರೋಗ್ಯ ವಿಷಯಗಳನ್ನು ಒಳಗೊಂಡ ಆರೋಗ್ಯ ಪಾಲನೆಯಂಥ ಕ್ಷೇತ್ರಗಳಲ್ಲಿ ಮತ್ತು ಅಭಿವೃದ್ಧಿ ಹೊಂದುತ್ತಿರುವ ಇತರೆ ಸಂಬಂಧಪಟ್ಟ ಕ್ಷೇತ್ರಗಳನ್ನು ಒಳಗೊಂಡಂತೆ ವಿವಿಧ ವಿಷಯಗಳಲ್ಲಿ ಶಿಕ್ಷಣ, ಬೋಧನೆ, ತರಬೇತಿ, ಸಂಶೋಧನೆ, ಸಮಾಲೋಚನೆ ಮತ್ತು ಅಭಿವೃದ್ಧಿಗೆ ಅವಕಾಶವನ್ನು ಕಲ್ಪಿಸುವುದು ಮತ್ತು ಈ ಕ್ಷೇತ್ರಗಳಲ್ಲಿ ಸಂಶೋಧನೆ ನಡೆಸಲು, ಪ್ರಗತಿಯನ್ನು ಸಾಧಿಸಲು ಮತ್ತು ಜ್ಞಾನವನ್ನು ಪ್ರಸಾರ ಮಾಡಲು ಉಪಬಂಧಗಳನ್ನು ರಚಿಸುವುದು;

(ii) ಉನ್ನತ ಹಾಗೂ ವೃತ್ತಿ ಶಿಕ್ಷಣ ಕ್ಷೇತ್ರಗಳಲ್ಲಿನ ಬೋಧಕರಿಗೆ ಸರ್ಕಾರದಲ್ಲಿ, ಸಾರ್ವಜನಿಕ ಮತ್ತು ಖಾಸಗಿ ವಲಯಗಳಲ್ಲಿ ಕಾರ್ಯನಿರ್ವಹಿಸುವ ಆಡಳಿತಗಾರರು ಮತ್ತು ವೃತ್ತಿಪರರಿಗೆ ಉನ್ನತ ಗುಣಮಟ್ಟದ ತರಬೇತಿ, ಸಾಮರ್ಥ್ಯ ನಿರ್ಮಾಣ ಮತ್ತು ಅಭಿವೃದ್ಧಿ ಪದ್ಧತಿಗಳನ್ನು ವಿನ್ಯಾಸಗೊಳಿಸುವುದು ಮತ್ತು ಹೇಳುವುದು ಹಾಗೂ ಇತರೆ ವ್ಯವಸ್ಥೆಗಳಲ್ಲಿನ ವೃತ್ತಿಪರರನ್ನು ಅಭಿವೃದ್ಧಿ ಪಡಿಸುವುದು;

(iii) ಗುಣಮಟ್ಟದ ಶಿಕ್ಷಣವನ್ನು ನೀಡುವುದಕ್ಕಾಗಿ ಸಂಪನ್ಮೂಲ ಕೇಂದ್ರಗಳನ್ನು ಅಭಿವೃದ್ಧಿ ಪಡಿಸುವುದು;

(iv) ವಿಶ್ವವಿದ್ಯಾಲಯ ಅನುದಾನಗಳ ಆಯೋಗದ ಮಾಹಿತಿಗಳಿಗೆ ಅನುಸಾರವಾಗಿ ಸರ್ಕಾರದ ಪೂರ್ವಾನುಮೋದನೆಯೊಂದಿಗೆ, ಕರ್ನಾಟಕದಲ್ಲಿನ ವಿವಿಧ ಸ್ಥಳಗಳಲ್ಲಿ ಕ್ಯಾಂಪಸ್ಸುಗಳನ್ನು ಸ್ಥಾಪಿಸುವುದು ಮತ್ತು ಅಧ್ಯಾಯನ ಕೇಂದ್ರಗಳನ್ನು, ಘಟಕ ಕಾಲೇಜುಗಳನ್ನು ಮತ್ತು ಪ್ರಾದೇಶಿಕ ಕೇಂದ್ರಗಳನ್ನು ಹೊಂದುವುದು ಮತ್ತು ತಾಂತ್ರಿಕ, ವೃತ್ತಿಪರ, ಶಿಕ್ಷಣ ಮತ್ತು ಸಾಮಾಜಿಕ ಹಾಗೂ ಮಾನವ ಅಭಿವೃದ್ಧಿಯಲ್ಲಿಯ ಶೈಕ್ಷಣಿಕ ಬದಲಾವಣೆಗಳ ಬಗ್ಗೆ ಅರಿವನ್ನುಂಟು ಮಾಡುವುದು ಮತ್ತು ಆ ಬಗ್ಗೆ ಕೊಡುಗೆಯನ್ನು ನೀಡುವುದು.

(v) ನಿರ್ಧರಣೆಯ ವಿವಿಧ ವಿಧಾನಗಳ ಮೂಲಕ ಮಾಡಿದ ಮೌಲ್ಯಮಾಪನಕ್ಕೆ ಅನುಸಾರವಾಗಿ ಯಶಸ್ವಿಯಾಗಿ ಪೂರ್ಣಗೊಳಿಸಿದುದರ ಆಧಾರದ ಮೇಲೆ ಪದವಿಗಳನ್ನು, ಡಿಪ್ಲೋಮೋಗಳನ್ನು, ಪ್ರಮಾಣಪತ್ರಗಳನ್ನು ಮತ್ತು ಯಶೋಪತ್ರ ಪ್ರದಾನದಂಥ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(vi) ವಿದ್ಯಾರ್ಥಿಗಳಿಗೆ, ಬೋಧಕ ಸದಸ್ಯರಿಗೆ ಮತ್ತು ಇತರರಿಗೆ ನಿರ್ದಿಷ್ಟ ಶೈಕ್ಷಣಿಕ ಮತ್ತು ಸಂಶೋಧನಾ ಕಾರ್ಯಕ್ರಮಗಳು, ತರಬೇತಿ ಕಾರ್ಯಕ್ರಮಗಳು ಮತ್ತು ವಿಚಾರ ವಿನಿಮಯ ಕಾರ್ಯಕ್ರಮಗಳನ್ನು ಪರಿಕಲ್ಪಿಸಲು, ವಿನ್ಯಾಸಗೊಳಿಸಲು, ಅಭಿವೃದ್ಧಿಪಡಿಸಲು ಮತ್ತು ನೀಡಲು ಯಾವುದೇ ಇತರ ವಿಶ್ವವಿದ್ಯಾಲಯಗಳು ಸಂಶೋಧನಾ ಸಂಸ್ಥೆಗಳು ಲಾಭರಹಿತ ಸಂಘಟನೆಗಳು ಇವುಗಳೊಂದಿಗೆ ಸಹಯೋಗ ಕಲ್ಪಿಸುವುದು;

(vii) ವಿಚಾರ ಸಂಕೀರ್ಣಗಳು, ಸಮ್ಮೇಳನಗಳು, ಕಾರ್ಯಾಂಗ ಶಿಕ್ಷಣ ಕಾರ್ಯಕ್ರಮಗಳು, ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳು, ಪ್ರಕಟಣೆಗಳು ಮತ್ತು ತರಬೇತಿ ಕಾರ್ಯಕ್ರಮಗಳು ಮತ್ತು ಕಾರ್ಯಸೂಚಿಗಳ ಮೂಲಕ ಜ್ಞಾನ ಪ್ರಸಾರ ಮಾಡುವುದು ಮತ್ತು ಶಿಕ್ಷಣ ಮತ್ತು ತತ್ಸಂಬಂಧಿತ ಅಭಿವೃದ್ಧಿ ಕ್ಷೇತ್ರಗಳ ವಿಷಯಗಳ ಬಗ್ಗೆ ಸಾರ್ವಜನಿಕ ಚರ್ಚೆಯನ್ನು ಏರ್ಪಡಿಸುವುದು;

(viii) ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ವಿಶ್ವಾದ್ಯಂತ ಇರುವ ಉತ್ತಮ ಗುಣಮಟ್ಟದ ಇತರ ಯಾವುವೇ ವಿಶ್ವವಿದ್ಯಾಲಯಗಳೊಂದಿಗೆ ಸಹಭಾಗಿಗಳಾಗಿ ವಿಶ್ವವಿದ್ಯಾಲಯದ ಬೋಧಕ ವೃಂದ (ಫ್ಯಾಕಲ್ಟಿ) ಮತ್ತು ಸಂಶೋಧಕರ ಅಭಿವೃದ್ಧಿ ಮತ್ತು ತರಬೇತಿಗಾಗಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು;

(ix) ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುದೇ ಸಂಸ್ಥೆಯೊಂದಿಗೆ ಜೊತೆಗೂಡಿ ಸಂಶೋಧನೆಯನ್ನು ನಡೆಸುವುದು ಮತ್ತು ಸಮರ್ಥನೆಗೊಳಿಸುವುದು;

(x) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದಕ್ಕಾಗಿ ಮತ್ತು ಉತ್ತೇಜಿಸುವುದಕ್ಕಾಗಿ ಅವಶ್ಯಕವಾದ ಮತ್ತು ಯುಕ್ತವಾದ ಕ್ರಮಗಳನ್ನು ಕೈಗೊಳ್ಳುವುದು;

(xi) ಶಿಕ್ಷಣ ಮತ್ತು ಇತರ ಅಭಿವೃದ್ಧಿ ವಲಯಗಳನ್ನು ವಿಸ್ತರಿಸುವುದಕ್ಕಾಗಿ ಸರ್ಕಾರವು ಅನುಮೋದಿಸಬಹುದಾದಂತೆ ಯಾವುವೇ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದು.

**8. ವಿಶ್ವವಿದ್ಯಾಲಯದ ಅಧಿಕಾರಗಳು.–** ವಿಶ್ವವಿದ್ಯಾಲಯವು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗೆ ಅನುಸಾರವಾಗಿ ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿರ್ಧರಿಸಬಹುದಾದ ಅಂಥ ಕ್ಯಾಂಪಸ್ಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಕರ್ನಾಟಕದಲ್ಲಿ ಸ್ಥಾಪಿಸುವುದು, ನಿರ್ವಹಿಸುವುದು;

(ii) ವಿಶ್ವವಿದ್ಯಾಲಯದ ಉದ್ದೇಶವನ್ನು ಕಾರ್ಯರೂಪಕ್ಕೆ ತರುವಲ್ಲಿ ಅಗತ್ಯವಾಗಬಹುದಾದ ಅಥವಾ ಕಾರ್ಯಸಾಧ್ಯವಾಗಬಹುದಾದ ಎಲ್ಲಾ ಅಂಥ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು;

(iii) ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಮತ್ತು ಷರತ್ತುಗಳಿಗೊಳಪಟ್ಟು ಪದವಿಗಳು ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರದಾನಮಾಡುವುದು;

(iv) ಪರಿನಿಯಮಗಳನ್ವಯ ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿ ವೇತನಗಳು ಮತ್ತು ಬಹುಮಾನಗಳು, ಅವಾರ್ಡುಗಳು, ಪಾರಿತೋಷಕಗಳು ಇತ್ಯಾದಿಗಳನ್ನು ಸ್ಥಾಪಿಸುವುದು ಮತ್ತು ನೀಡುವುದು;

(v) ಸಂದರ್ಭಾನುಸಾರ ಪರಿನಿಯಮಗಳಲ್ಲಿ ಅಥವಾ ನಿಯಮಗಳಲ್ಲಿ ನಿಗದಿಪಡಿಸಬಹುದಾದ ಅಂಥ ಶುಲ್ಕಗಳು, ಬಿಲ್ಲುಗಳು, ಖರೀದಿ ಪಟ್ಟಿಗಳನ್ನು ಕೇಳಿಪಡೆದುಕೊಳ್ಳುವುದು ಮತ್ತು ಸ್ವೀಕರಿಸುವುದು ಹಾಗೂ ಚಾರ್ಜುಗಳನ್ನು ವಸೂಲು ಮಾಡುವುದು;

(vi) ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಪಠ್ಯೇತರ ಚಟುವಟಿಕೆಗಳಿಗೆ ಅವಕಾಶಗಳನ್ನು ಕಲ್ಪಿಸುವುದು;

(vii) ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಕ್ಯಾಂಪಸ್ಸುಗಳ, ಪ್ರಾದೇಶಿಕ ಕೇಂದ್ರಗಳ, ಅಧ್ಯಯನ ಕೇಂದ್ರಗಳ ಫ್ಯಾಕಲ್ಟಿ, ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವುದು;

(viii) ವಿಶ್ವವಿದ್ಯಾಲಯದ ಅಥವಾ ಒಂದು ಘಟಕ ಕಾಲೇಜಿನ ಅಥವಾ ಕ್ಯಾಂಪಸ್ಸಿನ, ಪ್ರಾದೇಶಿಕ ಕೇಂದ್ರದ, ಅಧ್ಯಯನ ಕೇಂದ್ರದ ಉದ್ದೇಶಕ್ಕಾಗಿ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದಿರುವ, ಯಾವುದೇ ರೀತಿಯ ಸ್ವಯಂ ದೇಣಿಗೆಗಳು ಮತ್ತು ಕೊಡುಗೆಗಳನ್ನು ಸ್ವೀಕರಿಸುವುದು ಮತ್ತು ನ್ಯಾಸ ಮತ್ತು ದತ್ತಿ ಸ್ವತ್ತುಗಳೂ ಸೇರಿದಂತೆ, ಯಾವುದೇ ಚರ ಅಥವಾ ಸ್ಥಿರ ಸ್ವತ್ತನ್ನು ಅರ್ಜಿಸುವುದು, ಹೊಂದಿರುವುದು, ನಿರ್ವಹಿಸುವುದು, ನಡೆಸುವುದು ಮತ್ತು ಹಸ್ತಾಂತರ ಮಾಡುವುದು;

(ix) ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸಿಕೊಂಡು ಬರುವುದು ಹಾಗೂ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ ವಿದ್ಯಾರ್ಥಿಗಳಿಗೆ ವಸತಿ ಸ್ಥಳಗಳಾಗಿ ಮಾನ್ಯತೆ ನೀಡುವುದು;

(x) ವಸತಿಯ ಮೇಲ್ವಿಚಾರಣೆ ಮಾಡುವುದು ಮತ್ತು ನಿಯಂತ್ರಣ ಮಾಡುವುದು ಹಾಗೂ ವಿದ್ಯಾರ್ಥಿಗಳು ಮತ್ತು ಎಲ್ಲಾ ಪ್ರವರ್ಗಗಳ ಸಿಬ್ಬಂದಿಗಳಲ್ಲಿ ಶಿಸ್ತು ನಿಯಂತ್ರಣ ಮಾಡುವುದು ಮತ್ತು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ನಡತೆ ಸಂಹಿತೆಯನ್ನು ರೂಪಿಸುವುದೂ ಒಳಗೊಂಡಂತೆ, ಅಂಥ ಸಿಬ್ಬಂದಿಗಳ ಸೇವಾಷರತ್ತುಗಳನ್ನು ನಿರೂಪಿಸುವುದು;

(xi) ಶೈಕ್ಷಣಿಕ, ಆಡಳಿತಾತ್ಮಕ ಮತ್ತು ಬೆಂಬಲ ಸಿಬ್ಬಂದಿಯ ಹುದ್ದೆಗಳನ್ನು ಮತ್ತು ಇತರ ಅವಶ್ಯ ಹುದ್ದೆಗಳನ್ನು ಸೃಜಿಸುವುದು;

(xii) ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ಉದ್ದೇಶಗಳಿಗಾಗಿ ಇತರ ವಿಶ್ವವಿದ್ಯಾಲಯಗಳೊಡನೆ ಸಹಕರಿಸುವುದು ಮತ್ತು ಸಹಯೋಗ ಹೊಂದುವುದು;

(xiii) ಶಿಕ್ಷಕರಿಗೆ, ಪಾಠಗಳನ್ನು ರಚಿಸುವವರಿಗೆ, ಮೌಲ್ಯಮಾಪಕರಿಗೆ ಮತ್ತಿತರ ಶೈಕ್ಷಣಿಕ ಸಿಬ್ಬಂದಿಗೆ ಪುನರ್ಮನನ ವ್ಯಾಸಂಗಕ್ರಮಗಳು, ಅಭಿಮುಖ ವ್ಯಾಸಂಗ ಕ್ರಮಗಳು, ಕಾರ್ಯಾಗಾರಗಳು, ವಿಚಾರಗೋಷ್ಠಿಗಳು ಮತ್ತಿತರ ಕಾರ್ಯಕ್ರಮಗಳನ್ನು ಏರ್ಪಡಿಸುವುದು ಮತ್ತು ನಡೆಸುವುದು;

(xiv) ಶೈಕ್ಷಣಿಕ ಪರಿಷತ್ತಿನ ಅನುಮೋದನೆಯೊಂದಿಗೆ ವಿಶ್ವವಿದ್ಯಾಲಯಕ್ಕೆ ಅಥವಾ ಘಟಕ ಕಾಲೇಜಿಗೆ, ಪ್ರಾದೇಶಿಕ ಕೇಂದ್ರಗಳಿಗೆ, ಅಧ್ಯಯನ ಕೇಂದ್ರಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮತ್ತು ಈ ಅಧಿನಿಯಮದಲ್ಲಿ ಕಲ್ಪಿಸಿದ ವ್ಯಾಪ್ತಿಗಿಂತ ಕಡಿಮೆಯಿಲ್ಲದಂತೆ ಕರ್ನಾಟಕದ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮಾನಕ ಗುಣಮಟ್ಟಗಳನ್ನು ನಿರ್ಧರಿಸುವುದು;

(xv) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಕಾರ್ಯರೂಪಕ್ಕೆ ತರಲು ಅವಶ್ಯವಾಗಬಹುದಾದಂಥ ಇತರ ಎಲ್ಲಾ ಕ್ರಮಗಳನ್ನು ಅಥವಾ ಕಾರ್ಯಗಳನ್ನು, ಅವು ಮೇಲೆ ಹೇಳಿದ ಅಧಿಕಾರಗಳಿಗೆ ಪ್ರಾಸಂಗಿಕವಾಗಿರಲಿ ಅಥವಾ ಇಲ್ಲದಿರಲಿ, ಕೈಗೊಳ್ಳುವುದು;

(xvi) ಪರೀಕ್ಷೆಗಳ ಆಧಾರದ ಮೇಲೆ ಅಥವಾ ಸರ್ಕಾರದಿಂದ ಅನುಮೋದಿತವಾದ ಇತರ ಯಾವುದೇ ಮೌಲ್ಯಮಾಪನ ವಿಧಾನದ ಆಧಾರದ ಮೇಲೆ ನೀಡಲು ಪದವಿಗಳು, ಡಿಪ್ಲೋಮಾಗಳು, ಪ್ರಮಾಣಪತ್ರಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಸ್ಥಾಪಿಸುವುದು;

(xvii) ಫಿಲಂಗಳು, ಕ್ಯಾಸೆಟ್‌ಗಳು, ಧ್ವನಿಸುರುಳಿಗಳು, ದೃಶ್ಯಸುರುಳಿಗಳು, ಸಿ.ಡಿ., ವಿ.ಸಿ.ಡಿ. ಮತ್ತು ಇತರ ತಂತ್ರಾಂಶಗಳೂ ಹಾಗೂ ಇತರ ಸಂಬಂಧಿತ ವಿದ್ಯುನ್ಮಾನ ಮತ್ತು ಮುದ್ರಣ ಮಾಧ್ಯಮ ಸೇರಿದಂತೆ ಬೋಧಕ ಸಾಮಗ್ರಿಗಳನ್ನು ತಯಾರಿಸುವುದಕ್ಕಾಗಿ ಅವಕಾಶ ಕಲ್ಪಿಸುವುದು;

(xviii) ಪ್ರಬಂಧಕ ಮಂಡಳಿಯ ಅನುಮೋದನೆಯೊಡನೆ ವಿಶ್ವವಿದ್ಯಾಲಯದ ಉದ್ದೇಶಗಳಿಗಾಗಿ ವಿಶ್ವವಿದ್ಯಾಲಯದ ಸ್ವತ್ತುಗಳನ್ನು ಭದ್ರತೆಯಾಗಿ ನೀಡಿ ಅಥವಾ ನೀಡದೆ ಹಣವನ್ನು ಪಡೆಯುವುದು, ಸಂಗ್ರಹಿಸುವುದು, ಚಂದಾದಾರರಾಗುವುದು ಮತ್ತು ಸಾಲ ಪಡೆಯುವುದು;

(xix) ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುದೇ ಇತರ ಶೈಕ್ಷಣಿಕ ಸಂಸ್ಥೆಗಳ ಆಡಳಿತವನ್ನು ವಶಪಡಿಸಿಕೊಳ್ಳುವುದು, ವಹಿಸಿಕೊಳ್ಳುವುದು;

(xx) ವ್ಯವಸ್ಥಾಪನಾ ಮಂಡಳಿಯ ಪೂರ್ವಾನುಮೋದನೆಯೊಂದಿಗೆ ಸ್ವತ್ತುಗಳನ್ನು ಆರ್ಜಿಸುವುದು;

(xxi) ವಿಶ್ವವಿದ್ಯಾಲಯದ ಮೇಲಿನ ಉದ್ದೇಶಗಳಿಗೆ ಸಂಬಂಧಿಸಿದ ಅಥವಾ ಪ್ರಾಸಂಗಿಕವಾದ ಯಾವುದೇ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು.

**9. ವಿಶ್ವವಿದ್ಯಾಲಯವು ಎಲ್ಲಾ ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲರಿಗೂ ಮುಕ್ತವಾಗಿರತಕ್ಕದ್ದು.-** ವಿಶ್ವವಿದ್ಯಾಲಯದ ಪ್ರವೇಶಗಳು ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲಾ ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು. ಎಲ್ಲಾ ಪ್ರವೇಶಗಳನ್ನು ಅರ್ಹತಾ ಪರೀಕ್ಷೆಗಳಲ್ಲಿನ ಅರ್ಹತೆಯ ಆಧಾರದ ಮೇಲೆ ಮಾಡತಕ್ಕದ್ದು:

ಪರಂತು, ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳ ಪ್ರವೇಶದಲ್ಲಿ ಶೇಕಡಾ ನಲವತ್ತರಷ್ಟನ್ನು ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ಮೀಸಲಿಡತಕ್ಕದ್ದು ಮತ್ತು ಪ್ರವೇಶಗಳನ್ನು ರಾಜ್ಯ ಸರ್ಕಾರವು ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡತಕ್ಕದ್ದು ಮತ್ತು ಸೀಟುಗಳನ್ನು ಅರ್ಹತ ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ರೂಪಿಸುವ ಮೀಸಲಾತಿ ನೀತಿಗೆ ಅನುಸಾರವಾಗಿ ಹಂಚಿಕೆ ಮಾಡತಕ್ಕದ್ದು:

ಮತ್ತು ಪರಂತು, ಯಾವುದೇ ಕೋರ್ಸಿನಲ್ಲಿ ಹತ್ತಕ್ಕಿಂತ ಕಡಿಮೆ ಸೀಟುಗಳು ಇರುವಲ್ಲಿ, ಸ್ನಾತಕೋತ್ತರ, ಇಂಥ ಕೋರ್ಸುಗಳನ್ನು ಒಟ್ಟಿಗೆ ಒಂದುಗೂಡಿಸುವ ಮೂಲಕ ಮೀಸಲಿಡತಕ್ಕದ್ದು ಮತ್ತು ಯಾವುದೇ ಕೋರ್ಸಿನಲ್ಲಿ ಮೂರು ಸೀಟುಗಳಿಗಿಂತ ಕಡಿಮೆ ಇರುವಲ್ಲಿ, ಅವುಗಳನ್ನು ಸುತ್ತುವಲ್ಲಿ ಸರದಿ ಮೀಸಲಿಡತಕ್ಕದ್ದು.

**10. ರಾಷ್ಟ್ರೀಯ ಅಧಿಮಾನ್ಯತೆ.**– ವಿಶ್ವವಿದ್ಯಾಲಯವು ಪ್ರಾರಂಭವಾದ ತರುವಾಯ ಆದಷ್ಟು ಬೇಗನೆ ಸಂಬಂಧಪಟ್ಟ ಶಾಸನಾತ್ಮಕ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳಿಂದ ಅಧಿಮಾನ್ಯತೆಯನ್ನು ಕೋರತಕ್ಕದ್ದು ಮತ್ತು ಖಾಸಗಿ ವಿಶ್ವವಿದ್ಯಾಲಯಗಳು ನಡೆಸುವ ಎಲ್ಲಾ ವ್ಯಾಸಂಗ ಕ್ರಮಗಳು ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ವಿನಿಯಮಗಳಿಗೆ ಅನುಸಾರವಾಗಿ ಇರತಕ್ಕದ್ದು.

**11. ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು.**– ಪ್ರಾಯೋಜಕ ಸಂಸ್ಥೆಯು ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದಂತೆ ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಇವುಗಳಲ್ಲಿ ಪ್ರತಿಯೊಂದನ್ನು ಪ್ರಾಯೋಜಕ ಸಂಸ್ಥೆಯು ತನ್ನ ವಿವೇಚನಾನುಸಾರ ಚಲಾಯಿಸಬಹುದು, ಎಂದರೆ:–

(i) ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಪುನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(ii) ವಿಶ್ವವಿದ್ಯಾಲಯದ ಪ್ರಥಮ ಪ್ರಬಂಧಕ ಮಂಡಳಿಯನ್ನು ರಚಿಸುವುದು;

(iii) ಪ್ರಬಂಧಕ ಮಂಡಳಿಯ ಅಧ್ಯಕ್ಷರನ್ನು ನಾಮನಿರ್ದೇಶಿಸುವುದು;

(iv) ಪ್ರಬಂಧಕ ಮಂಡಳಿಯ ಸದಸ್ಯರಾಗಿ ಮೂರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(v) ವ್ಯವಸ್ಥಾಪನಾ ಮಂಡಳಿಯ ಸದಸ್ಯರಾಗಿ ಇಬ್ಬರು ವ್ಯಕ್ತಿಗಳನ್ನು ನಾಮ ನಿರ್ದೇಶಿಸುವುದು;

(vi) ವಿಶ್ವವಿದ್ಯಾಲಯದ ದತ್ತಿ ನಿಧಿಗೆ ದೇಣಿಗೆ ನೀಡಲು ನಿಧಿ ಮೂಲಗಳನ್ನು ನಿರ್ಧರಿಸುವುದು;

(vii) ವಿಶ್ವವಿದ್ಯಾಲಯದ ಹಣದ ವಿನಿಯೋಗ ಮತ್ತು ವೆಚ್ಚ ಮಾಡುವುದನ್ನು ನಿರ್ಧರಿಸುವುದು;

(viii) ಈ ಅಧಿನಿಯಮದಲ್ಲಿ ಉಪಬಂಧಿಸಿರುವ ವಿಧಾನದಲ್ಲಿ ಪ್ರಬಂಧಕ ಮಂಡಳಿಯ ಸಭೆಯಲ್ಲಿಯ ವಿವಾದಗಳನ್ನು ಬಗೆಹರಿಸುವುದು;

## ಅಧ್ಯಾಯ – III

## ವಿಶ್ವವಿದ್ಯಾಲಯದ ಅಧಿಕಾರಿಗಳು

**12. ವಿಶ್ವವಿದ್ಯಾಲಯದ ಅಧಿಕಾರಿಗಳು.**– ಈ ಮುಂದಿನವರು ವಿಶ್ವವಿದ್ಯಾಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:–

(i) ಸಂದರ್ಶಕರು;

(ii) ಸಹ–ಸಂದರ್ಶಕರು;

(iii) ಕುಲಾಧಿಪತಿಗಳು;

(iv) ಕುಲಪತಿಗಳು;

(v) ಸಹಕುಲಪತಿಗಳು;

(vi) ಕುಲಸಚಿವರು;

(vii) ಹಣಕಾಸು ಅಧಿಕಾರಿ; ಮತ್ತು

(viii) ಪರಿನಿಯಮಗಳ ಮೂಲಕ ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಘೋಷಿಸಬಹುದಾದಂಥ ಇತರ ಅಧಿಕಾರಿಗಳು.

**13. ಸಂದರ್ಶಕರು.**– (1) ಕರ್ನಾಟಕದ ಘನತೆವೆತ್ತ ರಾಜ್ಯಪಾಲರು ವಿಶ್ವವಿದ್ಯಾಲಯದ ಸಂದರ್ಶಕರಾಗಿರತಕ್ಕದ್ದು ಮತ್ತು ಸಂದರ್ಶಕರು ವಿಶ್ವವಿದ್ಯಾಲಯದ ಕಾರ್ಯನಿರ್ವಹಣೆಯ ಸುಧಾರಣೆಗಾಗಿ ಸಲಹೆಗಳನ್ನು ನೀಡಬಹುದು.

(2) ಸಂದರ್ಶಕರು, ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಸಂದರ್ಶಕರು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

ಪ್ರಾಧಿಕಾರವನ್ನು ಆತನು ಕೋರತಕ್ಕದ್ದು ಮತ್ತು ಪ್ರಾಧಿಕಾರವು ಅಂಥ ನಿರ್ಣಯವನ್ನು ಸಂಪೂರ್ಣವಾಗಿ ಅಥವಾ ಭಾಗಶಃವಾಗಿ ಪರಿಷ್ಕರಿಸಲು ನಿರಾಕರಿಸಿದ ಸಂದರ್ಭದಲ್ಲಿ ಅಥವಾ ಹದಿನೈದು ದಿನಗಳೊಳಗೆ ಯಾವುದೇ ನಿರ್ಣಯವನ್ನು ತೆಗೆದುಕೊಳ್ಳಲು ವಿಫಲವಾದಲ್ಲಿ, ನಂತರ ಅಂಥ ವಿಷಯವನ್ನು ಕುಲಾಧಿಪತಿಗಳಿಗೆ ಕಳುಹಿಸತಕ್ಕದ್ದು ಮತ್ತು ಈ ಬಗ್ಗೆ ಇವರ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

(6) ಕುಲಪತಿಯವರ ಸೇವೆಗಳನ್ನು, ಪ್ರಬಂಧಕ ಮಂಡಳಿಯ ಅನುಮೋದನೆಯೊಂದಿಗೆ ಮತ್ತು ಸಹಜ ನ್ಯಾಯದ ತತ್ವಗಳನ್ನು ಅನುಸರಿಸಿದ ನಂತರ ಹಾಗೂ ಶಿಸ್ತಿನ ಆಧಾರದ ಮೇಲೆ ಅಂತ್ಯಗೊಳಿಸುವ ಸಂದರ್ಭವೂ ಸೇರಿದಂತೆ, ಪ್ರಕರಣದ ಬಗ್ಗೆ ಕುಲಪತಿಯು ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡಿದ ತರುವಾಯ, ಕುಲಾಧಿಪತಿಯವರು ಅಂತ್ಯಗೊಳಿಸಬಹುದು.

(7) ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಸಂದರ್ಶಕರು, ಸಹ-ಸಂದರ್ಶಕರು ಮತ್ತು ಕುಲಾಧಿಪತಿಯವರು ಇವರುಗಳ ಗೈರು ಹಾಜರಿಯ ಸಂದರ್ಭದಲ್ಲಿ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**17. ಸಹಕುಲಪತಿಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಮೂರು ಜನರನ್ನು ಮೀರದಂತೆ ಸಹಕುಲಪತಿಗಳನ್ನು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**18. ವ್ಯಾಸಂಗ ವಿಭಾಗಗಳ ಡೀನ್‌ಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಪರಿನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವ್ಯಾಸಂಗ ವಿಭಾಗಗಳ ಡೀನ್‌ಗಳನ್ನು ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**19. ಕುಲಸಚಿವರು.–** (1) ಕುಲಾಧಿಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಸಚಿವರನ್ನು ನೇಮಕ ಮಾಡತಕ್ಕದ್ದು.

(2) ಪರಿನಿಯಮಗಳಲ್ಲಿ ಪರಿಭಾಷಿಸಿರುವಂಥ ಎಲ್ಲಾ ಕರಾರುಗಳನ್ನು ವಿಶ್ವವಿದ್ಯಾಲಯದ ಪರವಾಗಿ ಕುಲಸಚಿವರು ಮಾಡಿಕೊಳ್ಳತಕ್ಕದ್ದು ಮತ್ತು ಅದಕ್ಕೆ ಸಹಿ ಹಾಕತಕ್ಕದ್ದು.

(3) ಕುಲಸಚಿವರು ವಿಶ್ವವಿದ್ಯಾಲಯದ ಪರವಾಗಿ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಪರಿನಿಯಮಗಳಿಂದ ಪ್ರದತ್ತಗೊಳಿಸಬಹುದಾದಂಥ ಅಥವಾ ಕುಲಾಧಿಪತಿಯವರು ಮತ್ತು ಕುಲಪತಿಯವರು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು ವಿಶ್ವವಿದ್ಯಾಲಯದ ದಾಖಲೆಗಳು ಮತ್ತು ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು, ಕುಲಪತಿಯವರು ಅಥವಾ ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಅಂಥ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿತಕ್ಕದ್ದು.

**20. ಹಣಕಾಸು ಅಧಿಕಾರಿ.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು, ಪರಿನಿಯಮಗಳ ಮೂಲಕ ಪ್ರದತ್ತಗೊಳಿಸಬಹುದಾದ ಅಂಥ ವಿಧಾನದಲ್ಲಿ ಹಣಕಾಸು ಅಧಿಕಾರಿಯನ್ನು ನೇಮಕ ಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**21. ಇತರ ಅಧಿಕಾರಿಗಳು.–** ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ ನೇಮಕಾತಿಯ ವಿಧಾನ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಕರ್ತವ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ – IV

### ವಿಶ್ವವಿದ್ಯಾಲಯದ ಪ್ರಾಧಿಕಾರಗಳು

**22. ವಿಶ್ವವಿದ್ಯಾಲಯದ ಪ್ರಾಧಿಕಾರಗಳು.–** ಈ ಮುಂದಿನವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:–

(i) ಪ್ರಬಂಧಕ ಮಂಡಳಿ;

(ii) ವ್ಯವಸ್ಥಾಪನಾ ಮಂಡಳಿ;

(iii) ಶೈಕ್ಷಣಿಕ ಪರಿಷತ್ತು;

(iv) ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು;

(v) ಹಣಕಾಸು ಸಮಿತಿ; ಮತ್ತು

(vi) ವಿಶ್ವವಿದ್ಯಾಲಯದ ಪ್ರಾಧಿಕಾರಗಳೆಂದು ಪರಿನಿಯಮಗಳ ಮೂಲಕ ಘೋಷಿಸಬಹುದಾದ ಅಂಥ ಇತರ ಪ್ರಾಧಿಕಾರಗಳು.

**23. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು.–** (1) ಪ್ರಬಂಧಕ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು – ಅಧ್ಯಕ್ಷರು;

(ii) ಕುಲಪತಿಯವರು – ಸದಸ್ಯರು;

(iii) ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(iv) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(v) ರಾಜ್ಯ ಸರ್ಕಾರವು ನಾಮ ನಿರ್ದೇಶನ ಮಾಡಿದ ಆಡಳಿತವನ್ನು ಒಳಗೊಂಡಂತೆ ವ್ಯವಸ್ಥಾಪನೆ, ಹಣಕಾಸು ಅಥವಾ ಯಾವುದೇ ಇತರ ವಿಶೇಷ ಕ್ಷೇತ್ರದಲ್ಲಿನ ಒಬ್ಬರು ತಜ್ಞರು;

(vi) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಇಬ್ಬರು ವ್ಯಕ್ತಿಗಳು ಅವರ ಪೈಕಿ ಒಬ್ಬರು ಮಹಿಳೆಯಾಗಿರತಕ್ಕದ್ದು;

(vii) ಸಹ ಕುಲಪತಿಯವರು ಮತದಾನದ ಹಕ್ಕಿಲ್ಲದ ಸದಸ್ಯರಾಗಿರತಕ್ಕದ್ದು;

(viii) ವಿಶ್ವವಿದ್ಯಾಲಯ ಅನುದಾನ ಆಯೋಗದ ನಾಮನಿರ್ದೇಶಿತ ಒಬ್ಬ ಸುಪ್ರಸಿದ್ಧ ಶಿಕ್ಷಣ ತಜ್ಞರು.

(2) ಕುಲಸಚಿವರು ಮಂಡಳಿಯ ಮತದಾನದ ಹಕ್ಕಿರದ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ಪ್ರಬಂಧಕ ಮಂಡಳಿಯ ಸದಸ್ಯರ ಪದಾವಧಿ, ಸರ್ಕಾರದಿಂದ ನಾಮನಿರ್ದೇಶಿತರಾದ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ನೇಮಕಾತಿ, ನವೀಕರಣ ಮತ್ತು ತೆಗೆದುಹಾಕುವುದು ಮುಂತಾದವುಗಳು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಾಧಿಪತಿಯವರು ಯಾವಾಗಲೂ ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರ ಗೈರುಹಾಜರಿಯಲ್ಲಿ ಕುಲಾಧಿಪತಿಯವರಿಂದ ನಾಮನಿರ್ದೇಶಿತರಾದ ಯಾರಾದರೂ ಒಬ್ಬರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು. ಅಂಥ ಸಭೆಯ ಅಧ್ಯಕ್ಷತೆಯನ್ನು ವಹಿಸುವುದಕ್ಕೆ ಕುಲಾಧಿಪತಿಯವರು ಯಾವೊಬ್ಬ ವ್ಯಕ್ತಿಯನ್ನೂ ನಾಮನಿರ್ದೇಶನ ಮಾಡಿರದಿದ್ದಲ್ಲಿ, ಸಭೆಯಲ್ಲಿ ಹಾಜರಿರುವ ಸದಸ್ಯರು ಸರಳ ಬಹುಮತದ ಮೂಲಕ ಅವರುಗಳ ಪೈಕಿಯಿಂದಲೇ ಆ ಸಭೆಗೆ ಮಾತ್ರವೇ ಅಧ್ಯಕ್ಷನನ್ನು ಚುನಾಯಿಸತಕ್ಕದ್ದು.

(5) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಿಗೆ, ಅಂಥ ಸಭೆಯಲ್ಲಿ ಹಾಜರಾಗುವ ಮತ್ತು ಮತದಾನ ನೀಡುವ ಮೂರು ಜನ ಸದಸ್ಯರು ಗಣಪೂರ್ತಿ (ಕೋರಂ) ಆಗಿರತಕ್ಕದ್ದು:

ಪರಂತು, ಪ್ರಬಂಧಕ ಮಂಡಳಿಯ ಯಾವುದೇ ಸಭೆಯ ಕೋರಂ ಪೂರ್ಣವಾಗಬೇಕಾದರೆ ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಿರುವುದು ಮತ್ತು ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ನಾಮನಿರ್ದೇಶಿತರು ಹಾಜರಾಗದೇ ಇದ್ದಾಗ ಕುಲಪತಿಯವರು ಹಾಜರಿರುವುದು ಯಾವಾಗಲೂ ಅವಶ್ಯಕವಾಗಿರತಕ್ಕದ್ದು.

(6) ಪ್ರಬಂಧಕ ಮಂಡಳಿಯು ವಿಶ್ವವಿದ್ಯಾಲಯದ ಪ್ರಧಾನ ಪ್ರಬಂಧಕ ಸಂಸ್ಥೆಯಾಗಿರತಕ್ಕದ್ದು ಮತ್ತು ಅದು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಕಗೊಳಿಸುವುದು;

(ii) ವಿಶ್ವವಿದ್ಯಾಲಯವು ಅನುಸರಿಸಬೇಕಾದ ಕಾರ್ಯನೀತಿಗಳನ್ನು ರಚಿಸುವುದು;

(iii) ಈ ಅಧಿನಿಯಮದ ಅಥವಾ ಪರಿನಿಯಮಗಳ ಅಥವಾ ನಿಯಮಗಳ ಉಪಬಂಧಗಳಿಗೆ ಅನುಗುಣವಾಗಿ ಇರದ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ತೀರ್ಮಾನಗಳನ್ನು ಪುನರೀಕ್ಷಿಸುವುದು;

(iv) ವಿಶ್ವವಿದ್ಯಾಲಯದ ಆಯವ್ಯಯ ಮತ್ತು ವಾರ್ಷಿಕ ವರದಿಗಳನ್ನು ಅನುಮೋದಿಸುವುದು;

(v) ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸುವುದು ಅಥವಾ ಈಗಾಗಲೇ ಇರುವ ಪರಿನಿಯಮಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವುದು ಅಥವಾ ನಿರಸನಗೊಳಿಸುವುದು;

(vi) ವಿಶ್ವವಿದ್ಯಾಲಯವನ್ನು ಸ್ವಯಂಸಮಾಪನಗೊಳಿಸುವ ನಿರ್ಧಾರವನ್ನು ತೆಗೆದುಕೊಳ್ಳುವುದು;

(vii) ಸರ್ಕಾರಕ್ಕೆ ಸಲ್ಲಿಸುವ ಪ್ರಸ್ತಾವಗಳನ್ನು ಅನುಮೋದಿಸುವುದು;

(viii) ಶುಲ್ಕ ನಿಯಂತ್ರಣ ಸಮಿತಿಗೆ ಮೂವರು ಸದಸ್ಯರನ್ನು ನಾಮನಿರ್ದೇಶನ ಮಾಡುವುದು;

(ix) ವಿಶ್ವವಿದ್ಯಾಲಯದ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕೆ ಅಪೇಕ್ಷಣೀಯವೆಂದು ಕಂಡುಬರುವಂಥ ತೀರ್ಮಾನಗಳನ್ನು ಮತ್ತು ಕ್ರಮಗಳನ್ನು ಕೈಗೊಳ್ಳುವುದು.

(7) ಪ್ರಬಂಧಕ ಮಂಡಳಿಯು ಒಂದು ವರ್ಷದಲ್ಲಿ ಕನಿಷ್ಠ ಮೂರು ಸಲ ಸಭೆ ಸೇರತಕ್ಕದ್ದು.

(8) ಪ್ರಬಂಧಕ ಮಂಡಳಿಯು, ಶಾಸನದ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ಸಮಯ ಮತ್ತು ಸ್ಥಳದಲ್ಲಿ ಸಭೆ ಸೇರತಕ್ಕದ್ದು.

**24. ವ್ಯವಸ್ಥಾಪನಾ ಮಂಡಳಿ.**– (1) ವ್ಯವಸ್ಥಾಪನಾ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಗಳು;

(ii) ಸಹಕುಲಪತಿಗಳು;

(iii) ಕುಲಸಚಿವರು;

(iv) ಪ್ರಾಯೋಜಕ ಸಂಸ್ಥೆಯ ಇಬ್ಬರು ನಾಮನಿರ್ದೇಶಿತರು;

(v) ಕುಲಪತಿಗಳು ನಾಮನಿರ್ದೇಶಿಸಬಹುದಾದ ವ್ಯಾಸಂಗ ವಿಭಾಗಗಳ ಇಬ್ಬರು ಡೀನ್‌ಗಳು;

(2) ಕುಲಪತಿಯವರು ವ್ಯವಸ್ಥಾಪನಾ ಮಂಡಳಿಯ ಅಧ್ಯಕ್ಷರಾಗಿರತಕ್ಕದ್ದು ಮತ್ತು ಕುಲಸಚಿವರು ವ್ಯವಸ್ಥಾಪನಾ ಮಂಡಳಿಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ವ್ಯವಸ್ಥಾಪನಾ ಮಂಡಳಿಯು ವಿಶ್ವವಿದ್ಯಾಲಯದ ಕಾರ್ಯನಿರ್ವಾಹಕ ಸಂಸ್ಥೆಯಾಗಿರತಕ್ಕದ್ದು. ವ್ಯವಸ್ಥಾಪನಾ ಮಂಡಳಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ವ್ಯವಸ್ಥಾಪನಾ ಮಂಡಳಿಯ ಎಲ್ಲಾ ಸಭೆಗಳಲ್ಲಿ ಯಾವಾಗಲೂ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು ಹಾಗೂ ಕುಲಪತಿಯವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೇ ಇದ್ದ ಸಂದರ್ಭದಲ್ಲಿ ಸಭೆಯಲ್ಲಿ ಹಾಜರಿರುವ ಸದಸ್ಯರು ಚುನಾಯಿಸಿದ ಯಾವುದೇ ಇತರ ಸದಸ್ಯರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ವ್ಯವಸ್ಥಾಪನಾ ಮಂಡಳಿಯ ಸಭೆಯಲ್ಲಿ ಯಾವುದೇ ವಿಷಯವನ್ನು ಕುರಿತು ವಿವಾದ ಉಂಟಾದಲ್ಲಿ ಸದರಿ ವಿಷಯವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯದ ಬಗ್ಗೆ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**25. ಶೈಕ್ಷಣಿಕ ಪರಿಷತ್ತು.**–(1) ಶೈಕ್ಷಣಿಕ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಕಾರ್ಯದರ್ಶಿಗಳು

(iv) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಶೈಕ್ಷಣಿಕ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಶೈಕ್ಷಣಿಕ ಸಂಸ್ಥೆಯಾಗಿರತಕ್ಕದ್ದು ಮತ್ತು ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಹಾಗೂ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**26. ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು.–** (1) ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಸಂಶೋಧನೆ ಮತ್ತು ಅನ್ವೇಷಣಾ ಸಮಿತಿಯಾಗಿರತಕ್ಕದ್ದು ಹಾಗೂ ಸಂಶೋಧನೆ ಮತ್ತು ಅನ್ವೇಷಣಾ ಕ್ಷೇತ್ರಗಳ ಆದ್ಯತೆಯೂ ಒಳಗೊಂಡಂತೆ, ವಿಶ್ವವಿದ್ಯಾಲಯವು ಕೈಗೊಳ್ಳಬೇಕಾದ ಸಂಶೋಧನೆ ಮತ್ತು ಅನ್ವೇಷಣೆಯ ಬಗ್ಗೆ ಒಂದು ವ್ಯಾಪಕವಾದ ಪರಿಪೂರ್ಣ ಭವಿಷ್ಯದ್ ದೃಷ್ಟಿಯನ್ನು ಒದಗಿಸತಕ್ಕದ್ದು. ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು, ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಮತ್ತು ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಸಂಶೋಧನೆ ಮತ್ತು ಅನ್ವೇಷಣಾ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಸಂಶೋಧನೆಯ ಡೀನ್ – ಕಾರ್ಯದರ್ಶಿ

(iv) ಅನ್ವೇಷಣಾ ವಿಭಾಗದ ಮುಖ್ಯಸ್ಥರು – ಸದಸ್ಯರು

(v) ಎಲ್ಲಾ ವ್ಯಾಸಂಗ ವಿಭಾಗಗಳ ಡೀನ್‌ಗಳು – ಸದಸ್ಯರು ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

**27. ಹಣಕಾಸು ಸಮಿತಿ.–** (1) ಹಣಕಾಸು ಸಮಿತಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು ಅಥವಾ ಅವರ ನಾಮನಿರ್ದೇಶಿತರು – ಅಧ್ಯಕ್ಷರು

(ii) ಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಸದಸ್ಯರು

(iv) ಹಣಕಾಸು ಅಧಿಕಾರಿ – ಕಾರ್ಯದರ್ಶಿ

(v) ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು – ಸದಸ್ಯರು; ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಹಣಕಾಸು ಸಮಿತಿಯು ಹಣಕಾಸಿನ ವಿಷಯಗಳನ್ನು ಕೈಗೊಳ್ಳುವ ವಿಶ್ವವಿದ್ಯಾಲಯದ ಪ್ರಧಾನ ಹಣಕಾಸು ಸಂಸ್ಥೆಯಾಗಿರತಕ್ಕದ್ದು ಹಾಗೂ ಅದು ಈ ಅಧಿನಿಯಮ, ನಿಯಮಗಳು ಮತ್ತು ಪರಿನಿಯಮಗಳ ಉಪಬಂಧಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಹಣಕಾಸು ವಿಷಯಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**28. ಇತರ ಪ್ರಾಧಿಕಾರಗಳು.–** ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ರಚನೆ, ಅಧಿಕಾರಗಳು ಹಾಗೂ ಪ್ರಕಾರ್ಯಗಳು ಪರಿನಿಯಮಗಳಿಂದ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

**29. ಒಂದು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯತ್ವಕ್ಕೆ ಅನರ್ಹತೆ.–** ವಿಶ್ವವಿದ್ಯಾಲಯದ ಸಂಸ್ಥೆಗಳ ಯಾವುವೇ ಪ್ರಾಧಿಕಾರದ ಒಬ್ಬ ವ್ಯಕ್ತಿಯು,–

(ಎ) ಅಸ್ವಸ್ಥ ಚಿತ್ತನಾಗಿದ್ದು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿಸಲ್ಪಟ್ಟಿದ್ದರೆ;

(ಬಿ) ಅವಿಮುಕ್ತ ದಿವಾಳಿಯಾಗಿದ್ದರೆ;

(ಸಿ) ನೈತಿಕ ಅಧಃಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದರೆ;

(ಡಿ) ಖಾಸಗಿ ಬೋಧನಾ ತರಗತಿಗಳನ್ನು ನಡೆಸುತ್ತಿದ್ದರೆ ಅಥವಾ ಸ್ವತಃ ನಿರತನಾಗಿದ್ದರೆ;

(ಇ) ಯಾವುದೇ ವಿಧದಲ್ಲಿ, ಎಲ್ಲಿಯೇ, ಯಾವುದೇ ಪರೀಕ್ಷೆಯನ್ನು ನಡೆಸುವಲ್ಲಿ ಅನುಚಿತ ಅಭ್ಯಾಸದಲ್ಲಿ ತೊಡಗಿದ್ದಕ್ಕಾಗಿ ಅಥವಾ ಉತ್ತೇಜಿಸಿದ್ದಕ್ಕಾಗಿ ದಂಡಿತನಾಗಿದ್ದರೆ;

(ಎಫ್) ಪ್ರಾಯೋಜಿತ ಸಂಸ್ಥೆಯು ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಯಾವೊಬ್ಬ ಸದಸ್ಯನನ್ನು ಆ ಪದವನ್ನು ಹೊಂದಿರುವುದಕ್ಕೆ ಅರ್ಹನಲ್ಲನೆಂದು ಲಿಖಿತದಲ್ಲಿ ಅಭಿಪ್ರಾಯ ನೀಡಿದಾಗಲೆಲ್ಲಾ,

– ಸದಸ್ಯನಾಗಿರುವುದಕ್ಕೆ ಅನರ್ಹನಾಗತಕ್ಕದ್ದು.

**30. ಖಾಲಿಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಕಾರ್ಯ ಅಥವಾ ವ್ಯವಹರಣೆಗಳು ಕೇವಲ ಅದರಲ್ಲಿ ಯಾವುದೇ ಖಾಲಿಸ್ಥಾನ ಇದೆ ಎಂಬ ಕಾರಣದಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣದಿಂದ ಮಾತ್ರವೇ ಅಸಿಂಧುವಾಗತಕ್ಕದ್ದಲ್ಲ.

**31. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು.–** (1) ಯಾವುವೇ ಕಾರ್ಯಸೂಚಿ ವಿಷಯಗಳನ್ನು ಕುಲಾಧಿಪತಿಯವರ ಪೂರ್ವಾನುಮೋದನೆಯನ್ನು ಪಡೆಯದೇ ಪ್ರಬಂಧಕ ಮಂಡಳಿಯ ಅಥವಾ ವ್ಯವಸ್ಥಾಪನಾ ಮಂಡಳಿಯ ಅಥವಾ ಯಾವುದೇ ಸಮಿತಿಯ ಸಭೆಗಳ ಕಾರ್ಯಸೂಚಿ ವಿಷಯಗಳಲ್ಲಿ ಸೇರಿಸತಕ್ಕದ್ದಲ್ಲ ಅಥವಾ ಚರ್ಚೆಗೆ ತೆಗೆದುಕೊಳ್ಳತಕ್ಕದ್ದಲ್ಲ ಮತ್ತು ತೀರ್ಮಾನಿಸತಕ್ಕದ್ದಲ್ಲ.

(2) ಈ ಅಧಿನಿಯಮದ ಯಾವುದೇ ಉಪಬಂಧಗಳನ್ನು ಪಾಲಿಸದೆ ಇರುವ ಸಂದರ್ಭದಲ್ಲಿ, ಕುಲಾಧಿಪತಿಯವರು ವಿಶ್ವವಿದ್ಯಾಲಯದ ಯಾವುದೇ ಪದಾಧಿಕಾರಿ ಅಥವಾ ಸಂಸ್ಥೆಯು ತೆಗೆದುಕೊಂಡ ಎಲ್ಲಾ ತೀರ್ಮಾನಗಳನ್ನು ವಿಪರ್ಯಯಗೊಳಿಸುವ ಮೂಲಕ ಪರಿಹಾರ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಅಧಿಕಾರವನ್ನು ಎಲ್ಲಾ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಅಂಥ ಪರಿಹಾರ ಕ್ರಮದ ಪರಿಣಾಮವಾಗಿ ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ವಿಶ್ವವಿದ್ಯಾಲಯದ ಪದಾಧಿಕಾರಿ ಅಥವಾ ಸಂಸ್ಥೆಯು ಕೈಗೊಂಡಿದ್ದ ಎಲ್ಲಾ ಅಂಥ ಕ್ರಮಗಳು, ಮೊದಲಿನಿಂದಲೂ ಶೂನ್ಯ ಮತ್ತು ಅಕೃತ ಎಂದು ಭಾವಿಸತಕ್ಕದ್ದು ಹಾಗೂ ತತ್ಪರಿಣಾಮವಾಗಿ, ಉಪಬಂಧ ಪಾಲಿಸದೇ ಇದ್ದ ವಿಷಯ ಅಥವಾ ನಿರ್ಧಾರದ ಸಂಬಂಧದಲ್ಲಿ ಅದಕ್ಕೆ ಮುಂಚೆ ಇದ್ದ ವಸ್ತುಸ್ಥಿತಿಯೇ ಮುಂದುವರಿಯತಕ್ಕದ್ದು.

## ಅಧ್ಯಾಯ – V

## ಪರಿನಿಯಮಗಳು ಮತ್ತು ವಿನಿಯಮಗಳು

**32. ಪರಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಪರಿನಿಯಮಗಳು ವಿಶ್ವವಿದ್ಯಾಲಯಕ್ಕೆ ಮತ್ತು ಸಿಬ್ಬಂದಿಗೆ ಸಂಬಂಧಿಸಿದ ಎಲ್ಲಾ ಅಥವಾ ಯಾವುದೇ ವಿಷಯಕ್ಕೆ ಈ ಕೆಳಗಿನಂತೆ ಉಪಬಂಧ ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಕಾರ್ಯಕಲಾಪಗಳನ್ನು ನಡೆಸುವ ಮತ್ತು ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸದಿರುವ ಸಂಸ್ಥೆಗಳ ರಚನೆಯ ಕಾರ್ಯವಿಧಾನ;

(ii) ಶಾಶ್ವತ ಶಾಸನಬದ್ಧ ದತ್ತಿ ನಿಧಿ, ವಿಶ್ವವಿದ್ಯಾಲಯ ದತ್ತಿ ನಿಧಿ, ಸಾಮಾನ್ಯ ನಿಧಿ ಹಾಗೂ ಅಭಿವೃದ್ಧಿ ನಿಧಿಗಳ ನಿರ್ವಹಣೆ;

(iii) ಕುಲಪತಿಗಳು, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರ ನೇಮಕಾತಿಯ ನಿಬಂಧನೆಗಳು ಹಾಗೂ ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಪ್ರಕಾರ್ಯಗಳು;

(iv) ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ, ಅಧ್ಯಾಪಕರ ಮತ್ತು ನೌಕರರ ನೇಮಕಾತಿ ವಿಧಾನ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(v) ವಿಶ್ವವಿದ್ಯಾಲಯ ಹಾಗೂ ಅದರ ಅಧಿಕಾರಿಗಳು, ವ್ಯಾಸಂಗ ವಿಭಾಗದ (ಫ್ಯಾಕಲ್ಟಿ) ಸದಸ್ಯರು, ನೌಕರರು ಹಾಗೂ ವಿದ್ಯಾರ್ಥಿಗಳ ನಡುವೆ ಉಂಟಾದ ವಿವಾದಗಳನ್ನು ಪರಿಹರಿಸುವ ಕಾರ್ಯವಿಧಾನ;

(vi) ವಿಭಾಗಗಳು ಮತ್ತು ವ್ಯಾಸಂಗ ವಿಭಾಗಗಳ (ಫ್ಯಾಕಲ್ಟಿಗಳ) ಸೃಜನೆ, ರದ್ದತಿ ಅಥವಾ ಮನಾರಚನೆ;

(vii) ಇತರ ವಿಶ್ವವಿದ್ಯಾಲಯಗಳು ಅಥವಾ ಉನ್ನತ ಕಲಿಕಾ ಸಂಸ್ಥೆಗಳ ಜೊತೆಯಲ್ಲಿ ಸಹಕರಿಸಬೇಕಾದ ರೀತಿ;

(viii) ಗೌರವ ಪದವಿಗಳ ನೀಡಿಕೆಯ ಕಾರ್ಯವಿಧಾನ;

(ix) ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿವೇತನ ಮಂಜೂರಾತಿಗೆ ಸಂಬಂಧಿಸಿದ ಉಪಬಂಧಗಳು;

(x) ವಿವಿಧ ವ್ಯಾಸಂಗ ಕ್ರಮಗಳಲ್ಲಿನ ಸೀಟುಗಳ ಸಂಖ್ಯೆಗೆ ಸಂಬಂಧಿಸಿದ ಕಾರ್ಯನೀತಿಗಳು ಮತ್ತು ಅಂಥ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಕಾರ್ಯವಿಧಾನ;

(xi) ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಶುಲ್ಕಕ್ಕೆ ಸಂಬಂಧಿಸಿದ ಕಾರ್ಯನೀತಿ;

(xii) ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಉಚಿತ ಶಿಕ್ಷಣ, ಪದಕಗಳು ಹಾಗೂ ಬಹುಮಾನಗಳನ್ನು ಪ್ರಾರಂಭಿಸುವುದು;

(xiii) ಪ್ರಬಂಧಕ ಮಂಡಳಿಯು ನಿರ್ಧರಿಸಬಹುದಾದ ಅಥವಾ ಈ ಅಧಿನಿಯಮದ ಅಡಿಯಲ್ಲಿ ಪರಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬೇಕಾದ ಅಗತ್ಯತೆಯುಳ್ಳ ಯಾವುದೇ ಇತರ ವಿಷಯಗಳು.

**33. ಪರಿನಿಯಮಗಳ ರಚನೆ ವಿಧಾನ.–** (1) ವ್ಯವಸ್ಥಾಪನಾ ಮಂಡಳಿಯು ರಚಿಸಿದ ಮೊದಲ ಶಾಸನಗಳನ್ನು ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ವ್ಯವಸ್ಥಾಪನಾ ಮಂಡಳಿಯು ಸಲ್ಲಿಸಿದ ಮೊದಲ ಪರಿನಿಯಮಗಳನ್ನು ಪ್ರಬಂಧಕ ಮಂಡಳಿಯು ಪರಿಗಣಿಸತಕ್ಕದ್ದು ಹಾಗೂ ತಾನು ಅವಶ್ಯವೆಂದು ಭಾವಿಸಬಹುದಾದ ಅಂಥ ಮಾರ್ಪಾಡುಗಳು, ಯಾವುದಾದರು ಇದ್ದಲ್ಲಿ, ಅವುಗಳೊಡನೆ ತನ್ನ ಅನುಮೋದನೆಯನ್ನು ನೀಡತಕ್ಕದ್ದು.

(3) ವಿಶ್ವವಿದ್ಯಾಲಯವು, ಪ್ರಬಂಧಕ ಮಂಡಳಿಯು ಅನುಮೋದಿಸಿದ ಮೊದಲ ಪರಿನಿಯಮಗಳನ್ನು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ಪ್ರಕಟಿಸತಕ್ಕದ್ದು ಮತ್ತು ತದನಂತರ ಮೊದಲ ಪರಿನಿಯಮಗಳ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**34. ಪರಿನಿಯಮಗಳ ತಿದ್ದುಪಡಿಯ ಅಧಿಕಾರ.–** ಪ್ರಬಂಧಕ ಮಂಡಳಿಯು ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸಬಹುದು ಅಥವಾ ಪರಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ಅವನ್ನು ನಿರಸನಗೊಳಿಸಬಹುದು.

**35. ವಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ವಿನಿಯಮಗಳು ಈ ಮುಂದಿನ ಎಲ್ಲಾ ಅಥವಾ ಯಾವುದೇ ವಿಷಯಗಳಿಗೆ ಉಪಬಂಧಗಳನ್ನು ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ವಿದ್ಯಾರ್ಥಿ ಪಟ್ಟಿಯಲ್ಲಿ ಅವರುಗಳ ದಾಖಲಾತಿ ಹಾಗೂ ಮುಂದುವರಿಕೆ;

(ii) ವಿಶ್ವವಿದ್ಯಾಲಯದ ಎಲ್ಲಾ ಪದವಿಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ನಿಗದಿಪಡಿಸತಕ್ಕ ವ್ಯಾಸಂಗ ಕ್ರಮಗಳು;

(iii) ಪದವಿಗಳ ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರದಾನ;

(iv) ಸಂಶೋಧನಾ ವೇತನಗಳು (ಫೆಲೋಶಿಪ್), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಪದಕಗಳು ಮತ್ತು ಬಹುಮಾನಗಳನ್ನು ನೀಡಲು ಷರತ್ತುಗಳು;

(v) ಪರೀಕ್ಷೆಗಳನ್ನು ನಡೆಸುವುದು ಹಾಗೂ ಪರೀಕ್ಷೆ ನಡೆಸುವ ಸಂಸ್ಥೆಗಳು, ಪರೀಕ್ಷಕರು, ಪರೀಕ್ಷಾ ಮೇಲ್ವಿಚಾರಕರು, ಟ್ಯಾಬುಲೇಟರ್‌ಗಳು ಮತ್ತು ಮಾಡರೇಟರ್‌ಗಳ ನೇಮಕಾತಿ ಷರತ್ತುಗಳು ಮತ್ತು ವಿಧಾನ ಹಾಗೂ ಅವರ ಕರ್ತವ್ಯಗಳು;

(vi) ವಿಶ್ವವಿದ್ಯಾಲಯದ ಪರೀಕ್ಷೆಗಳ, ಪದವಿಗಳ ಹಾಗೂ ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರವೇಶಕ್ಕೆ ವಿಧಿಸತಕ್ಕ ಶುಲ್ಕ;

(vii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನಲ್ಲಿ ವಿದ್ಯಾರ್ಥಿಗಳ ನಿವಾಸಕ್ಕಾಗಿ ಷರತ್ತುಗಳು;

(viii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಶಿಸ್ತು ಪಾಲನೆ;

(ix) ಈ ಅಧಿನಿಯಮದ ಅಡಿಯಲ್ಲಿನ ಪರಿನಿಯಮಗಳಲ್ಲಿ ಉಪಬಂಧ ಕಲ್ಪಿಸಬಹುದಾಂಥ ಇತರ ಎಲ್ಲಾ ವಿಷಯಗಳು.

**36. ವಿನಿಯಮಗಳ ರಚನೆ ವಿಧಾನ.**– ವಿನಿಯಮಗಳನ್ನು ಶೈಕ್ಷಣಿಕ ಪರಿಷತ್ತು ರಚಿಸತಕ್ಕದ್ದು ಹಾಗೂ ವ್ಯವಸ್ಥಾಪನಾ ಮಂಡಳಿಯು ಅನುಮೋದಿಸತಕ್ಕದ್ದು.

**37. ವಿನಿಯಮಗಳ ತಿದ್ದುಪಡಿಗೆ ಅಧಿಕಾರ.**– ವ್ಯವಸ್ಥಾಪನಾ ಮಂಡಳಿಯ ಅನುಮೋದನೆಯೊಡನೆ ಶೈಕ್ಷಣಿಕ ಪರಿಷತ್ತು ಹೊಸ ವಿನಿಯಮಗಳನ್ನು ಅಥವಾ ಹೆಚ್ಚುವರಿ ವಿನಿಯಮಗಳನ್ನು ರಚಿಸಬಹುದು ಅಥವಾ ವಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ನಿರಸನಗೊಳಿಸಬಹುದು.

**38. ಶುಲ್ಕ ನಿಯಂತ್ರಣ ಸಮಿತಿ.**– (1) ಸರ್ಕಾರವು ರಚಿಸಿದ ನಿವೃತ್ತ ಸರ್ವೋಚ್ಚ ನ್ಯಾಯಾಲಯದ ಅಥವಾ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು ಮುಖ್ಯಸ್ಥರಾಗಿರುವ ಮತ್ತು ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ, ಉನ್ನತ ಶಿಕ್ಷಣ ಪ್ರಭಾರದಲ್ಲಿರುವ ಸರ್ಕಾರದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು ವೈದ್ಯಕೀಯ ಶಿಕ್ಷಣದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು, ಒಬ್ಬ ಮಹಿಳೆಯು ಸೇರಿದಂತೆ ಪ್ರಬಂಧಕ ಮಂಡಳಿಯು ನಾಮನಿರ್ದೇಶಿಸಿದ ಇಬ್ಬರು ಶಿಕ್ಷಣ ತಜ್ಞರು ಇವರುಗಳನ್ನು ಒಳಗೊಂಡ ಒಂದು ಶುಲ್ಕ ನಿಯಂತ್ರಣ ಸಮಿತಿಯು, 9ನೇ ಪ್ರಕರಣದ ಅಡಿಯಲ್ಲಿ ಕರ್ನಾಟಕದ ವಿದ್ಯಾರ್ಥಿಗಳಿಗಾಗಿ ಮೀಸಲಿರಿಸಿದ ವಿಶ್ವವಿದ್ಯಾಲಯದ ಸ್ಥಾನಗಳ ಶುಲ್ಕವನ್ನು ನಿಯಂತ್ರಿಸತಕ್ಕದ್ದು. ಸಮಿತಿಯಲ್ಲಿ ಈ ಉದ್ದೇಶಕ್ಕಾಗಿ ಒಬ್ಬರು ಖ್ಯಾತ ಚಾರ್ಟರ್ಡ್ ಅಕೌಂಟೆಂಟ್ ರವರನ್ನು ಸಹ ಸದಸ್ಯನನ್ನಾಗಿ ಸೇರಿಸಿಕೊಳ್ಳತಕ್ಕದ್ದು."

(2) ಸಮಿತಿಯು ವಿಶ್ವವಿದ್ಯಾಲಯದ ಪ್ರವೇಶಗಳ ಮತ್ತು ಶುಲ್ಕದ ಸಂಗ್ರಹಣೆಯ ಅನುಪಾಲನೆಯನ್ನು ನೋಡಿಕೊಳ್ಳತಕ್ಕದ್ದು.

## ಅಧ್ಯಾಯ – VI

## ಸಂಕೀರ್ಣ

**39. ನೌಕರರ ಸೇವಾ ಷರತ್ತುಗಳು.**– (1) ಪರಿನಿಯಮಗಳ ಮತ್ತು ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಥವಾ ನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳು, ಯಾವುದಾದರೂ ಇದ್ದಲ್ಲಿ, ಅವುಗಳಿಗೆ ಒಳಪಟ್ಟು ಪ್ರತಿಯೊಬ್ಬ ನೌಕರನು ಲಿಖಿತ ಕರಾರಿನ ಅಡಿಯಲ್ಲಿ ನೇಮಕಗೊಳ್ಳತಕ್ಕದ್ದು ಮತ್ತು ಅದನ್ನು ವಿಶ್ವವಿದ್ಯಾಲಯದಲ್ಲಿ ಇಟ್ಟುಕೊಳ್ಳತಕ್ಕದ್ದು ಹಾಗೂ ಅದರ ಪ್ರತಿಯನ್ನು ಸಂಬಂಧಪಟ್ಟ ನೌಕರನಿಗೆ ನೀಡತಕ್ಕದ್ದು.

(2) ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಕಾರ್ಯವಿಧಾನಗಳ ಮೂಲಕ ನಿಯಂತ್ರಿಸತಕ್ಕದ್ದು.

(3) ಕರಾರಿನಿಂದಾಗಿ ವಿಶ್ವವಿದ್ಯಾಲಯ ಮತ್ತು ನೌಕರನ ಮಧ್ಯದಲ್ಲಿ ಉದ್ಭವಿಸಬಹುದಾದ ಯಾವುದೇ ವಿವಾದವನ್ನು, ಲಿಖಿತ ಕರಾರಿನಲ್ಲಿ ಉಪಬಂಧಿಸಿದ ವಿಧಾನದಲ್ಲಿ ಹಾಗೂ ಪರಿನಿಯಮಗಳ ಅನುಸಾರವಾಗಿ ಪರಿಹರಿಸತಕ್ಕದ್ದು.

**40. ಮೇಲ್ಮನವಿ ಹಕ್ಕು.**– ವಿಶ್ವವಿದ್ಯಾಲಯವು ತನ್ನ ನೌಕರರ ಅಥವಾ ವಿದ್ಯಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡ ಸಂದರ್ಭದಲ್ಲಿ, ಬಾಧಿತ ನೌಕರ ಅಥವಾ ವಿದ್ಯಾರ್ಥಿಗಳು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಮೇಲ್ಮನವಿ ಹಕ್ಕನ್ನು ಹೊಂದಿರತಕ್ಕದ್ದು.

**41. ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿ .**– ವಿಶ್ವವಿದ್ಯಾಲಯವು, ತನ್ನ ನೌಕರರ ಪ್ರಯೋಜನಕ್ಕಾಗಿ, ಪರಿನಿಯಮಗಳು ಮತ್ತು ಜಾರಿಯಲ್ಲಿರುವ ಕಾನೂನುಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿಯನ್ನು ರಚಿಸತಕ್ಕದ್ದು ಹಾಗೂ ಅಂಥ ವಿಮಾ ಯೋಜನೆಗಳನ್ನು ಒದಗಿಸತಕ್ಕದ್ದು.

**42. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು.**– ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಇತರ ಸಂಸ್ಥೆಯ ಸದಸ್ಯನಾಗಿ ಯಾವೊಬ್ಬ ವ್ಯಕ್ತಿಯು ಸೂಕ್ತವಾಗಿ ಆಯ್ಕೆಯಾಗಿದ್ದಾನೆಯೇ ಅಥವಾ ನೇಮಕಗೊಂಡಿದ್ದಾನೆಯೇ ಅಥವಾ ಅದಕ್ಕೆ ಅರ್ಹನಾಗಿದ್ದಾನೆಯೇ ಎಂಬ ಯಾವುದೇ ಪ್ರಶ್ನೆ ಉದ್ಭವಿಸಿದರೆ, ಆ ವಿಷಯವನ್ನು ತೀರ್ಮಾನಕ್ಕಾಗಿ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**43. ಸಮಿತಿಗಳ ರಚನೆ.**– 22ನೇ ಪ್ರಕರಣದಲ್ಲಿ ನಮೂದಿಸಿದ ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಅಧಿಕಾರವನ್ನು ಹೊಂದಿರುವ ಅಂಥ ಸದಸ್ಯರನ್ನು ಒಳಗೊಂಡ ಅಂಥ ಪ್ರಾಧಿಕಾರದ ಒಂದು ಸಮಿತಿಯನ್ನು ರಚಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**44. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು.**– ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಂಸ್ಥೆಯ ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ಪೈಕಿ ಯಾವುದೇ ಸ್ಥಾನವು ಆಕಸ್ಮಿಕವಾಗಿ ಖಾಲಿಯಾದರೆ, ಯಾರ ಸ್ಥಾನವು ಖಾಲಿಯಾಗಿ ತುಂಬಬೇಕಾಗಿ ಬಂದಿದೆಯೋ ಆ ಸದಸ್ಯನನ್ನು ಯಾವ ರೀತಿಯಲ್ಲಿ ಆರಿಸಲಾಗಿತ್ತೋ ಅದೇ ರೀತಿಯಲ್ಲಿ ಹೊಸ ಸದಸ್ಯನನ್ನು ಆರಿಸಿ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ಖಾಲಿ ಸ್ಥಾನವನ್ನು ಭರ್ತಿ ಮಾಡಿದ ವ್ಯಕ್ತಿಯು ಆತನು ಯಾವ ಸದಸ್ಯನ ಸ್ಥಾನದಲ್ಲಿ ಭರ್ತಿಯಾಗಿರುವನೋ ಆ ಸದಸ್ಯನು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯನಾಗಿ ಉಳಿಯುತ್ತಿದ್ದ ಬಾಕಿ ಅವಧಿಯವರೆಗೆ ಮಾತ್ರ ಸದಸ್ಯನಾಗಿರತಕ್ಕದ್ದು.

**45. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.**– ಈ ಅಧಿನಿಯಮ ಅಥವಾ ಪರಿನಿಯಮಗಳು ಅಥವಾ ನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ವಿಶ್ವವಿದ್ಯಾಲಯದ ಯಾವೊಬ್ಬ ಅಧಿಕಾರಿ ಅಥವಾ ಇತರ ನೌಕರರ ವಿರುದ್ಧ ಯಾವುದೇ ದಾವೆ ಅಥವಾ ಇತರ ಕಾನೂನು ವ್ಯವಹರಣೆಗಳನ್ನು ನಡೆಸಲು ಅವಕಾಶ ಇರತಕ್ಕದ್ದಲ್ಲ.

**46. ತಾತ್ಕಾಲಿಕ ಉಪಬಂಧಗಳು.**– ಈ ಅಧಿನಿಯಮ ಮತ್ತು ಪರಿನಿಯಮಗಳ ಯಾವುದೇ ಇತರ ಉಪಬಂಧಗಳಲ್ಲಿ ಏನೇ ಇದ್ದರೂ,–

(i) ಮೊದಲ ಕುಲಪತಿ ಮತ್ತು ಸಹಕುಲಪತಿ, ಯಾರಾದರೂ ಇದ್ದರೆ, ಅವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(ii) ಮೊದಲ ಕುಲಸಚಿವರನ್ನು ಮತ್ತು ಮೊದಲ ಹಣಕಾಸು ಅಧಿಕಾರಿಯವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು; ಮತ್ತು

(iii) ಮೊದಲ ವ್ಯವಸ್ಥಾಪನಾ ಮಂಡಳಿ, ಮೊದಲ ಹಣಕಾಸು ಸಮಿತಿ, ಮೊದಲ ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಹಾಗೂ ಮೊದಲ ಶೈಕ್ಷಣಿಕ ಪರಿಷತ್ತನ್ನು ಕುಲಾಧಿಪತಿಯವರು ರಚಿಸತಕ್ಕದ್ದು.

**47. ಶಾಶ್ವತ ಶಾಸನಬದ್ಧ ದತ್ತಿ ನಿಧಿ.**– (1) ವಿಶ್ವವಿದ್ಯಾಲಯವು, ಕನಿಷ್ಠ ಇಪ್ಪತ್ತೈದು ಕೋಟಿ ರೂಪಾಯಿಗಳನ್ನುಳ್ಳ ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರ ಪೈಕಿ ಕನಿಷ್ಠ ಹದಿನೈದು ಕೋಟಿ ರೂಪಾಯಿಗಳು ನಗದು ರೂಪದಲ್ಲಿ ಮತ್ತು ಇನ್ನುಳಿದದ್ದು ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ಇರತಕ್ಕದ್ದು ಮತ್ತು ಇದನ್ನು ತಾನಾಗಿಯೇ ಹೆಚ್ಚಿಸಬಹುದಾಗಿದ್ದು ಆದರೆ ಕಡಿಮೆ ಮಾಡತಕ್ಕದ್ದಲ್ಲ:

ಪರಂತು, ಬೆಂಗಳೂರು ಅಥವಾ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊರಗಿರುವ ವಿಶ್ವವಿದ್ಯಾಲಯದ ಸಂದರ್ಭದಲ್ಲಿ ಕನಿಷ್ಠ ಹತ್ತು ಕೋಟಿ ರೂಪಾಯಿಗಳು ನಗದು ರೂಪದಲ್ಲಿರತಕ್ಕದ್ದು ಮತ್ತು ಉಳಿದ ಐದು ಕೋಟಿ ರೂಪಾಯಿಗಳು ಬ್ಯಾಂಕ್ ಗ್ಯಾರಂಟಿಯ ರೂಪದಲ್ಲಿರತಕ್ಕದ್ದು.

(2) ವಿಶ್ವವಿದ್ಯಾಲಯವು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಹಣವನ್ನು ಹೂಡಲು ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯವು ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಗೆ ವರ್ಗಾವಣೆ ಮಾಡಬಹುದು. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನೂ ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(4) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಿದ ವರಮಾನದ ಶೇಕಡಾ ಎಪ್ಪತ್ತೈದರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತೈದರಷ್ಟನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಯಲ್ಲಿ ಪುನ: ತೊಡಗಿಸತಕ್ಕದ್ದು.

**48. ವಿಶ್ವವಿದ್ಯಾಲಯದ ದತ್ತಿ ನಿಧಿ.**– (1) ವಿಶ್ವವಿದ್ಯಾಲಯವು, ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ನಿಧಿಗಳನ್ನು ಒಳಗೊಂಡ ವಿಶ್ವವಿದ್ಯಾಲಯದ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದು ಕಾಲಕಾಲಕ್ಕೆ ಸ್ವೀಕರಿಸಬಹುದಾದ ದೇಣಿಗೆಗಳು ಮತ್ತು ಇತರ ನಿಧಿಗಳನ್ನು ಒಳಗೊಂಡಿರತಕ್ಕದ್ದು.

(2) ವಿಶ್ವವಿದ್ಯಾಲಯವು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ವಿಶ್ವವಿದ್ಯಾಲಯದ ದತ್ತಿನಿಧಿಯನ್ನು ಹೂಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯ ದತ್ತಿ ನಿಧಿಯು, ವಿಶ್ವವಿದ್ಯಾಲಯವು ತನ್ನ ಸಾಮಾಜಿಕ ಧ್ಯೇಯೋದ್ದೇಶಗಳನ್ನು ನೆರವೇರಿಸುವ ಸಂದರ್ಭದಲ್ಲಿ ಮತ್ತು / ಅಥವಾ ಮುಂಗಾಣದ ಸನ್ನಿವೇಶದಲ್ಲಿ ಉದ್ಭವಿಸಬಹುದಾದ ಹಣಕಾಸು ಸವಾಲುಗಳಿಂದ ತನ್ನನ್ನು ರಕ್ಷಿಸಿಕೊಳ್ಳುವುದಕ್ಕಾಗಿ, ಸ್ವಇಚ್ಛೆಯಿಂದ ನಿರ್ವಹಿಸಿಕೊಂಡು ಬರಲು ಮತ್ತು ಜವಾಬ್ದಾರಿಯಿಂದ ಹಣ ಹೂಡಿಕೆ ಮಾಡಲು ಇಚ್ಛೆಯುಳ್ಳವರಾಗಿ ಸ್ವಯಂ ವಿಧಿಸಿಕೊಂಡ ನಿಧಿಯಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಗೆ ವರ್ಗಾಯಿಸಬಹುದು. ವಿಶ್ವವಿದ್ಯಾಲಯದ ಸಮಾಪಣೆಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನು ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(5) ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಬರುವ ವರಮಾನದ ಶೇಕಡಾ ಎಂಭತ್ತರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸದ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತರಷ್ಟನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**49. ಸಾಮಾನ್ಯ ನಿಧಿ.**– (1) ವಿಶ್ವವಿದ್ಯಾಲಯವು, ಒಂದು ಸಾಮಾನ್ಯ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯವು ವಿಧಿಸಬಹುದಾದ ಎಲ್ಲಾ ಶುಲ್ಕಗಳು;

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವುದೇ ಇತರ ಮೂಲದಿಂದ ಸ್ವೀಕರಿಸಲಾದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ದೇಣಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು;

(2) ಸಾಮಾನ್ಯ ನಿಧಿಗೆ ಜಮಾ ಮಾಡುವ ನಿಧಿಗಳನ್ನು ವಿಶ್ವವಿದ್ಯಾಲಯದ ಎಲ್ಲಾ ಆವರ್ತಕ ವೆಚ್ಚಗಳನ್ನು ಭರಿಸಲು ಉಪಯೋಗಿಸಿಕೊಳ್ಳತಕ್ಕದ್ದು.

**50. ಅಭಿವೃದ್ಧಿ ನಿಧಿ.**– (1) ವಿಶ್ವವಿದ್ಯಾಲಯವು, ಒಂದು ಅಭಿವೃದ್ಧಿ ನಿಧಿಯನ್ನು ಸಹ ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿದ್ಯಾರ್ಥಿಗಳಿಂದ ವಿಧಿಸಬಹುದಾದ ಅಭಿವೃದ್ಧಿ ಶುಲ್ಕಗಳು;

(ii) ವಿಶ್ವವಿದ್ಯಾಲಯದ ಅಭಿವೃದ್ಧಿಯ ಉದ್ದೇಶಗಳಿಗಾಗಿ ಯಾವುದೇ ಇತರ ಮೂಲಗಳಿಂದ ಸ್ವೀಕರಿಸಿದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ವಂತಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು; ಮತ್ತು

(v) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಲಾದ ಎಲ್ಲಾ ವರಮಾನಗಳು.

(2) ಅಭಿವೃದ್ಧಿ ನಿಧಿಗೆ ಕಾಲಕಾಲಕ್ಕೆ ಜಮಾ ಮಾಡಿದ ನಿಧಿಯನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಉಪಯೋಗಿಸಕೊಳ್ಳತಕ್ಕದ್ದು.

**51. ನಿಧಿಗಳ ನಿರ್ವಹಣೆ.–** 47, 48, 49 ಮತ್ತು 50ನೇ ಪ್ರಕರಣಗಳಡಿಯಲ್ಲಿ ಸ್ಥಾಪಿಸಲಾದ ನಿಧಿಗಳನ್ನು ಪ್ರಬಂಧಕ ಮಂಡಳಿಯ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ನಿಯಂತ್ರಿಸತಕ್ಕದ್ದು ಹಾಗೂ ನಿರ್ವಹಿಸತಕ್ಕದ್ದು.

**52. ವಾರ್ಷಿಕ ವರದಿ.–** (1) ವಿಶ್ವವಿದ್ಯಾಲಯದ ವಾರ್ಷಿಕ ವರದಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ಅದರ ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಪ್ರಬಂಧಕ ಮಂಡಳಿಯು ವಾರ್ಷಿಕ ವರದಿಯನ್ನು ತನ್ನ ಸಭೆಯಲ್ಲಿ ಪರಿಗಣಿಸತಕ್ಕದ್ದು ಹಾಗೂ ಅದನ್ನು ಮಾರ್ಪಾಡುಗಳೊಡನೆ ಅಥವಾ ಮಾರ್ಪಾಡುಗಳಿಲ್ಲದೆ ಅನುಮೋದಿಸಬಹುದು.

(3) ಪ್ರಬಂಧಕ ಮಂಡಳಿಯು ಸೂಕ್ತವಾಗಿ ಅನುಮೋದಿಸಿದ ವಾರ್ಷಿಕ ವರದಿಯ ಒಂದು ಪ್ರತಿಯನ್ನು ಪ್ರತಿವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ಡಿಸೆಂಬರ್ 31ಕ್ಕೆ ಮೊದಲು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**53. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.–** (1) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕ ಪತ್ರ ಮತ್ತು ಜಮಾ ಖರ್ಚು ಪಟ್ಟಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯಕ್ಕೆ ಎಲ್ಲಾ ಮೂಲಗಳಿಂದ ಪ್ರಾಪ್ತವಾಗುವ ಅಥವಾ ಸ್ವೀಕರಿಸಲಾಗುವ ಎಲ್ಲಾ ನಿಧಿಗಳು ಹಾಗೂ ವಿತರಿಸಿದ ಅಥವಾ ಸಂದಾಯ ಮಾಡಿದ ಎಲ್ಲಾ ಮೊಬಲಗುಗಳನ್ನು ವಿಶ್ವವಿದ್ಯಾಲಯವು ನಿರ್ವಹಿಸುವ ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕಪತ್ರಗಳನ್ನು ಪ್ರತಿ ವರ್ಷವೂ ಭಾರತದ ಚಾರ್ಟೆಡ್ ಅಕೌಟೆಂಟ್‌ಗಳ ಸಂಸ್ಥೆಯ ಸದಸ್ಯರಾಗಿರುವ ಒಬ್ಬ ಲೆಕ್ಕಪರಿಶೋಧಕರಿಂದ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಲೆಕ್ಕಪರಿಶೋಧನಾ ವರದಿಯೊಡನೆ, ಪ್ರತಿ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ನವೆಂಬರ್ 30ಕ್ಕೆ ಮೊದಲು ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(4) ವಾರ್ಷಿಕ ಲೆಕ್ಕಪತ್ರಗಳು, ಜಮಾಖರ್ಚು ಪಟ್ಟಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಪ್ರಬಂಧಕ ಮಂಡಳಿಯು ತನ್ನ ಸಭೆಯಲ್ಲಿ ಪರ್ಯಾಲೋಚಿಸತಕ್ಕದ್ದು ಮತ್ತು ಪ್ರಬಂಧಕ ಮಂಡಳಿಯು ಅದನ್ನು ತನ್ನ ಅಭಿಪ್ರಾಯಗಳೊಡನೆ ಸಂದರ್ಶಕರಿಗೆ ಹಾಗೂ ಸರ್ಕಾರಕ್ಕೆ ಪ್ರತಿ ವರ್ಷದ ಡಿಸೆಂಬರ್ 31ಕ್ಕೆ ಮೊದಲು ಕಳುಹಿಸತಕ್ಕದ್ದು.

**54. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಮಿತಿಯ ಯಾವುದೇ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ ಅಥವಾ ಗೊತ್ತುವಳಿಯು ಅಥವಾ ವಿಶ್ವವಿದ್ಯಾಲಯದ ಸ್ವಾಧೀನದಲ್ಲಿರುವ ಇತರ ದಾಖಲೆಗಳು ಅಥವಾ ವಿಶ್ವವಿದ್ಯಾಲಯವು ಯುಕ್ತವಾಗಿ ನಿರ್ವಹಿಸುವ ಯಾವುದೇ ರಿಜಿಸ್ಟರ್‌ನಲ್ಲಿಯ ಯಾವುದೇ ನಮೂದುಗಳ ಪ್ರತಿಯನ್ನು, ಅದರ ಮೇಲೆ ಕುಲಸಚಿವರು ಪ್ರಮಾಣೀಕರಿಸಿದ್ದರೆ, ಅದನ್ನು ಅಂಥ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ, ಗೊತ್ತುವಳಿ ಅಥವಾ ದಾಖಲೆ ಅಥವಾ ರಿಜಿಸ್ಟರ್‌ನಲ್ಲಿ ಇರುವ ನಮೂದನ್ನು ಮೇಲ್ನೋಟದ ಸಾಕ್ಷ್ಯವೆಂಬುದಾಗಿ ಸ್ವೀಕರಿಸತಕ್ಕದ್ದು ಮತ್ತು ವಿಷಯಗಳ ಸಾಕ್ಷಿಯಾಗಿ ಅಂಗೀಕರಿಸತಕ್ಕದ್ದು ಹಾಗೂ ಮೂಲ ದಾಖಲೆಗಳನ್ನೇ ಸಲ್ಲಿಸಿದ್ದರೆ ಅದನ್ನು, ದಾಖಲಿಸಿರುವ ವಿಷಯಗಳು ಮತ್ತು ವಹಿವಾಟುಗಳ ಸಾಕ್ಷ್ಯವಾಗಿ ಅಂಗೀಕರಿಸಲಾಗುತ್ತಿತ್ತೋ, ಅದೇ ರೀತಿಯಲ್ಲಿ ಇವನ್ನೂ ಸಾಕ್ಷ್ಯವಾಗಿ ಅಂಗೀಕರಿಸತಕ್ಕದ್ದು.

**55. ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ.–** ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಥವಾ ಅದರಲ್ಲಿ ಇರುವ ಯಾವುವೇ ಉಪಬಂಧಗಳನ್ನು ಅಥವಾ ಅದರಡಿಯಲ್ಲಿ ರಚಿಸಿದ ಯಾವುವೇ ನಿಯಮಗಳು ಅಥವಾ ಆದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿರ್ದೇಶನ ನೀಡುವುದು ಅವಶ್ಯವೆಂದು ಅಥವಾ ಉಚಿತವೆಂದು ಅಭಿಪ್ರಾಯಪಟ್ಟಲ್ಲಿ ಅದು ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ ಅಥವಾ ಸಂದರ್ಭಾನುಸಾರವಾಗಿ ವ್ಯವಸ್ಥಾಪನಾ ಮಂಡಳಿಯು ಅಂಥ ಪ್ರತಿಯೊಂದು ನಿರ್ದೇಶನವನ್ನು ಪಾಲಿಸತಕ್ಕದ್ದು.

**56. ದಂಡಗಳು.–** (1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿತವಾದ ನಿಯಮಗಳು ಉಪಬಂಧಗಳನ್ನು ಅಥವಾ ಯಾವುದೇ ಪರೀಕ್ಷಾ ವಿಷಯಗಳನ್ನು ಅಥವಾ ಪದವಿಗಳನ್ನು ನೀಡುವುದಕ್ಕೆ ಅಥವಾ ಅಂಕಪಟ್ಟಿಗಳನ್ನು ನೀಡುವುದಕ್ಕೆ ಸಂಬಂಧಪಟ್ಟ ವಿಷಯಗಳಲ್ಲಿ ಉಲ್ಲಂಘನೆಗಳನ್ನು ಮಾಡುವ ಯಾವೊಬ್ಬ ವ್ಯಕ್ತಿಯು,

ಅಪರಾಧ ನಿರ್ಣಯವಾದ ಮೇಲೆ, ಐವತ್ತು ಸಾವಿರ ರೂಪಾಯಿಗಳಿಗೆ ಕಡಿಮೆಯಲ್ಲದ ಆದರೆ ಹತ್ತು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಆರು ತಿಂಗಳ ಅವಧಿಗಿಂತ ಕಡಿಮೆಯಲ್ಲದ ಆದರೆ ಎರಡು ವರ್ಷಗಳ ಅವಧಿಯವರೆಗೆ ವಿಸ್ತರಿಸಬಹುದಾದ ಕಾರಾವಾಸದಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು:

ಪರಂತು, ವಿಶ್ವವಿದ್ಯಾಲಯವೂ ಸಹ ಒಳಗೊಂಡಿರುವಲ್ಲಿ, ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಈ ಅಧಿನಿಯಮದ ಅಡಿಯಲ್ಲಿ ನೀಡಲಾದ ಅನುಮತಿ ಪತ್ರವನ್ನು ಹಿಂತೆಗೆದುಕೊಳ್ಳತಕ್ಕದ್ದು.

(2) ಈ ಪ್ರಕರಣದ ಅಡಿಯಲ್ಲಿನ ದಂಡವನ್ನು ಇತರ ಯಾವುದೇ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಲಾದ ದಂಡಕ್ಕೆ ಬಾಧಕವಾಗದಂತೆ ವಿಧಿಸಬಹುದು.

57. **ಪ್ರವೇಶಿಸುವ ಮತ್ತು ಪರಿಶೋಧಿಸುವ ಅಧಿಕಾರ.**– ಈ ಉದ್ದೇಶಕ್ಕಾಗಿ, ರಾಜ್ಯ ಸರ್ಕಾರದಿಂದ ಪ್ರಾಧಿಕೃತಗೊಂಡ 'ಎ' ಸಮೂಹದ ಅಧಿಕಾರಿ ದರ್ಜೆಗಿಂತ ಕಡಿಮೆ ಇಲ್ಲದ ದರ್ಜೆಯ ಯಾವೊಬ್ಬ ಅಧಿಕಾರಿಯು, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಶನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ 37) ಅಡಿಯಲ್ಲಿ ನಿರ್ದಿಷ್ಟಪಡಿಸಿರಬಹುದಾದ ಅಂಥ ಷರತ್ತುಗಳಿಗೆ ಒಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ, ಆ ಅಧಿನಿಯಮದ 9ನೇ ಪ್ರಕರಣದ ಅಡಿಯಲ್ಲಿ ಉಪಬಂಧಿಸಲಾದಂತಹವೇ ಅಧಿಕಾರಗಳನ್ನು ಚಲಾಯಿಸಲು ಮತ್ತು ಪ್ರಕಾರ್ಯಗಳನ್ನು ನೆರವೇರಿಸಲು ಅಧಿಕೃತನಾದ ಅಧಿಕಾರಿ ಎಂಬುದಾಗಿ ಭಾವಿಸತಕ್ಕದ್ದು.

58. **ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ನಿರ್ದೇಶನವನ್ನು ನೀಡುವ ಅಧಿಕಾರ.**– (1) ವಿಶ್ವವಿದ್ಯಾಲಯವು ತನ್ನ ರಚನೆ ಅಥವಾ ನಿಗಮನವನ್ನು ನಿಯಂತ್ರಿಸುವ ಕಾನೂನಿಗೆ ಅನುಸಾರವಾಗಿ ತನ್ನ ಸಮಾಪನವನ್ನು ಉದ್ದೇಶಿಸಿದ್ದಲ್ಲಿ, ಅದು ಕನಿಷ್ಠ ಆರು ತಿಂಗಳ ಲಿಖಿತ ಪೂರ್ವ ಸೂಚನೆಯನ್ನು (ನೋಟೀಸು) ಸರ್ಕಾರಕ್ಕೆ ನೀಡತಕ್ಕದ್ದು.

(2) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಈ ಕೆಳಗಿನವುಗಳ ಬಗ್ಗೆ, ಎಂದರೆ:–

(i) ಪದವಿಯನ್ನು ನೀಡುವುದಕ್ಕಾಗಿ ಬೋಧನೆಯ ಗುಣಮಟ್ಟ;

(ii) ಶಿಕ್ಷಣದ ಗುಣಮಟ್ಟ;

(iii) ಉನ್ನತ ಶಿಕ್ಷಣದ ವ್ಯಾಪಾರೀಕರಣವನ್ನು ತಡೆಗಟ್ಟುವುದು;

(iv) ಅಧಿನಿಯಮದ ಉಪಬಂಧಗಳ ಉಲ್ಲಂಘನೆಯ ಬಗ್ಗೆ, ಯಾವುದಾದರೂ ಇದ್ದಲ್ಲಿ,

– ಇವುಗಳ ಬಗ್ಗೆ ನಿಯತಕಾಲಿಕ ಪರಿವೀಕ್ಷಣೆಯನ್ನು ನಡೆಸತಕ್ಕದ್ದು ಮತ್ತು ಸರ್ಕಾರಕ್ಕೆ ವರದಿಯನ್ನು ಕಳುಹಿಸತಕ್ಕದ್ದು.

(3) ದುರ್ವ್ಯವಹರಣೆ, ದುರಾಡಳಿತ ಮತ್ತು ಅಶಿಸ್ತು ಆಗಿದೆ ಎಂಬುದನ್ನು ಗುರುತಿಸಿದರೆ, ಸರ್ಕಾರವು, ವಿಶ್ವವಿದ್ಯಾಲಯದ ಆಡಳಿತ ವರ್ಗದವರಿಗೆ ಆಡಳಿತವನ್ನು ಸರಿಪಡಿಸಬೇಕೆಂದು ನಿರ್ದೇಶನಗಳನ್ನು ನೀಡತಕ್ಕದ್ದು. ನಿಯಮಿಸಬಹುದಾದ ಅಂಥ ಅವಧಿಯೊಳಗೆ ಆ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುವ ಹಕ್ಕು ಸರ್ಕಾರದಲ್ಲಿ ನಿಹಿತವಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ವಿಧಾನವು, ಸರ್ಕಾರವು ಈ ಸಂಬಂಧದಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು:

ಪರಂತು, ವಿಶ್ವವಿದ್ಯಾಲಯವು ತನ್ನ ಕಾರಣಗಳನ್ನು ಹೇಳಿಕೊಳ್ಳಲು ಸಮಂಜಸ ಅವಕಾಶಗಳನ್ನು ನೀಡಿದ ಹೊರತು ಅಂಥ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

(5) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೋಟೀಸನ್ನು ಸ್ವೀಕರಿಸಿದ ಮೇಲೆ, ಸರ್ಕಾರವು ಸಂಬಂಧಿಸಿದ ನಿಯಂತ್ರಣಾ ಪ್ರಾಧಿಕಾರದೊಡನೆ ಸಮಾಲೋಚಿಸಿ, ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ಅಥವಾ ವ್ಯಾಸಂಗ ಕ್ರಮವನ್ನು ಪರಿಸಮಾಪನಗೊಳಿಸಲು ಉದ್ದೇಶಿಸಿದ ದಿನಾಂಕದಿಂದ, ವಿಶ್ವವಿದ್ಯಾಲಯದಲ್ಲಿ ನಿಯತ ವ್ಯಾಸಂಗ ಕ್ರಮಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕೊನೆಯ ತಂಡ (ಬ್ಯಾಚ್) ತನ್ನ ವ್ಯಾಸಂಗ ಕ್ರಮವನ್ನು ಮುಗಿಸುವವರೆಗೆ ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು.

59. **ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು.**– (1) 58ನೇ ಪ್ರಕರಣದ (5)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ಅದರ ಆಡಳಿತಾತ್ಮಕ ವೆಚ್ಚಗಳನ್ನು ಶಾಶ್ವತ

ಶಾಸನಬದ್ಧ ದತ್ತಿ ನಿಧಿ, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ನೇಮಿಸಬಹುದಾದ ಅಂಥ ವಿಧಾನದಲ್ಲಿ ಭರಿಸತಕ್ಕದ್ದು.

(2) ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ವಿಶ್ವವಿದ್ಯಾಲಯದ ವೆಚ್ಚವನ್ನು ಭರಿಸಲು 47, 48, 49 ಮತ್ತು 50ನೇ ಪ್ರಕರಣಗಳ ಅಡಿಯಲ್ಲಿ ಉಲ್ಲೇಖಿಸಲಾದ ನಿಧಿಯು ಸಾಕಷ್ಟು ಇಲ್ಲದಿದ್ದಲ್ಲಿ, ಅಂಥ ವೆಚ್ಚವನ್ನು ಸರ್ಕಾರವು, ವಿಶ್ವವಿದ್ಯಾಲಯದ ಸ್ವತ್ತುಗಳು ಮತ್ತು ಆಸ್ತಿಗಳನ್ನು ವಿಲೇ ಮಾಡುವ ಮೂಲಕ ಭರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಸಮಾಪನೆಯು ದುರ್ವ್ಯವಹರಣೆ ಅಥವಾ ದುರಾಡಳಿತದ ಕಾರಣಗಳಿಗಾಗಿ ಆಗಿದ್ದರೆ, ಸರ್ಕಾರವು ಅಂಥ ದುರ್ವ್ಯವಹಾರಕ್ಕೆ ಅಥವಾ ದುರಾಡಳಿತಕ್ಕೆ ಹೊಣೆಯಾಗಿರುವ ವ್ಯಕ್ತಿಗಳನ್ನು ಗುರುತಿಸುವ ಮತ್ತು ಅವರ ಮೇಲೆ ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ದಂಡನೆಯನ್ನು ವಿಧಿಸಲು ಸ್ವತಂತ್ರವಾಗಿರತಕ್ಕದ್ದು.

**60. ತೊಂದರೆಗಳ ನಿವಾರಣೆಗೆ ಅಧಿಕಾರ.–** (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಅಥವಾ ಆದೇಶದ ಮೂಲಕ ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಐದು ವರ್ಷಗಳು ಮುಕ್ತಾಯವಾದ ತರುವಾಯ ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಅಧಿಸೂಚನೆ ಅಥವಾ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

**61. ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ.–** (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ಹೊರಡಿಸಲಾದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಉಭಯ ಸದನಗಳು ಒಪ್ಪಿದರೆ ತದನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ದತಿಯು ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವನ್ನು ಉಂಟುಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಜಿ.ಕೆ.ಬೋರೇಗೌಡ**

ಸರ್ಕಾರದ ಕಾರ್ಯದರ್ಶಿ

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) (500 ಪ್ರತಿಗಳು)

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| | | |
|---|---|---|
| ಭಾಗ – IV-A<br>Part – IV-A | ಬೆಂಗಳೂರು, ಶುಕ್ರವಾರ, ಫೆಬ್ರವರಿ ೮, ೨೦೧೩ (ಮಾಘ ೧೯, ಶಕ ವರ್ಷ ೧೯೩೪)<br>Bangalore, Friday, February 8, 2013 (Magha 19, Shaka Varsha 1934) | ನಂ.೧೬೫<br>No. 165 |


## ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ

## ಅಧಿಸೂಚನೆ

**ಸಂಖ್ಯೆ: ಸಂವ್ಯಶಾಇ 78 ಶಾಸನ 2012, ಬೆಂಗಳೂರು, ದಿನಾಂಕ: 08.02.2013**

ಶರಣಬಸವ ವಿಶ್ವವಿದ್ಯಾಲಯ ವಿಧೇಯಕ, 2012 – ಇದಕ್ಕೆ 2013ರ ಫೆಬ್ರವರಿ ತಿಂಗಳ ಐದನೇ ದಿನಾಂಕದಂದು ಘನತೆವೆತ್ತ ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2013ರ ಕರ್ನಾಟಕ ಅಧಿನಿಯಮ ಸಂಖ್ಯೆ: 17 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2013 ರ ಕರ್ನಾಟಕ ಅಧಿನಿಯಮ ಸಂಖ್ಯೆ: 17**

(2013ರ ಜನವರಿ ಮಾಹೆಯ ಎಂಟನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಶರಣಬಸವ ವಿಶ್ವವಿದ್ಯಾಲಯ ಅಧಿನಿಯಮ, 2012**

(2013ರ ಜನವರಿ ಮಾಹೆಯ ಐದನೇ ದಿನಾಂಕದಂದು ರಾಜ್ಯಪಾಲರ ಅನುಮತಿಯನ್ನು ಪಡೆಯಲಾಗಿದೆ)

ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ, ಆರೋಗ್ಯ ವಿಜ್ಞಾನಗಳು, ಕೃಷಿ ವಿಜ್ಞಾನಗಳು ಮತ್ತು ತಂತ್ರಜ್ಞಾನ, ವ್ಯವಸ್ಥಾಪನೆ ಮತ್ತು ತಂತ್ರಜ್ಞಾನ, ನೈಸರ್ಗಿಕ ವಿಜ್ಞಾನಗಳು, ಮಾನವಿಕಗಳು ಮತ್ತು ಸಮಾಜ ವಿಜ್ಞಾನಗಳು ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಪ್ರೋತ್ಸಾಹಿಸಲು ಮತ್ತು ಕೈಗೊಳ್ಳಲು ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದಕ್ಕಾಗಿ ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ, ಆರೋಗ್ಯ ವಿಜ್ಞಾನಗಳು, ಕೃಷಿ ವಿಜ್ಞಾನಗಳು ಮತ್ತು ತಂತ್ರಜ್ಞಾನ, ವ್ಯವಸ್ಥಾಪನೆ ಮತ್ತು ತಂತ್ರಜ್ಞಾನ, ನೈಸರ್ಗಿಕ ವಿಜ್ಞಾನಗಳು, ಮಾನವಿಕಗಳು ಮತ್ತು ಸಮಾಜ ವಿಜ್ಞಾನಗಳು ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಪ್ರೋತ್ಸಾಹಿಸಲು ಮತ್ತು ಕೈಗೊಳ್ಳಲು ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ಮೂರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

## ಅಧ್ಯಾಯ – I

## ಪ್ರಾರಂಭಿಕ

**1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.**- (1) ಈ ಅಧಿನಿಯಮವನ್ನು ಶರಣಬಸವ ವಿಶ್ವವಿದ್ಯಾಲಯ ಅಧಿನಿಯಮ, 2012 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. ಪರಿಭಾಷೆಗಳು.**- ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) "ಶೈಕ್ಷಣಿಕ ಪರಿಷತ್ತು (ಅಕೆಡೆಮಿಕ್ ಕೌನ್ಸಿಲ್)" ಎಂದರೆ, 25ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿಸಲಾದ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು;

(ಬಿ) "ಕಾರ್ಯಸೂಚಿ ವಿಷಯಗಳು", ಎಂದರೆ, ಪರಿನಿಯಮಗಳಲ್ಲಿ ಹೆಸರಿಸಬಹುದಾದ ಮತ್ತು ಒಂದು ಸಭೆಯಲ್ಲಿ ಆ ವಿಷಯಗಳನ್ನು ಮತ್ತು ಕಲಾಪಗಳನ್ನು ಅನುಮೋದಿಸಬಹುದೆಂದು ತಮ್ಮ ಸಮ್ಮತಿ ಸೂಚಿಸಿ ಕುಲಾಧಿಪತಿಯವರು ಮುಂಚಿತವಾಗಿಯೇ ಲಿಖಿತ ಅನುಮೋದನೆಯನ್ನು ಕೊಟ್ಟಿದ್ದಾಗ ಮಾತ್ರವೇ ಸಂದರ್ಭಾನುಸಾರ ಪ್ರಬಂಧಕ ಮಂಡಳಿ ಅಥವಾ ವ್ಯವಸ್ಥಾಪನಾ ಮಂಡಳಿ ಅಥವಾ ಯಾವುದೇ ಸಮಿತಿಯವರು ಕಾರ್ಯಸೂಚಿಯಲ್ಲಿ ಸೇರಿಸಬಹುದಾದ ಅಥವಾ ಸಭೆಯಲ್ಲಿ ಚರ್ಚೆಗೆ ತೆಗೆದುಕೊಂಡು ನಿರ್ಣಯವನ್ನು ಕೊಡಬಹುದಾದ ಎಲ್ಲಾ ವಿಷಯಗಳು ಮತ್ತು ಕಲಾಪಗಳು;

(ಸಿ) "ಪ್ರಬಂಧಕ ಮಂಡಳಿ" ಎಂದರೆ, 23ನೇ ಪ್ರಕರಣದ ಅಡಿಯಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ;

(ಡಿ) "ವ್ಯವಸ್ಥಾಪನಾ ಮಂಡಳಿ" ಎಂದರೆ, 24ನೇ ಪ್ರಕರಣದ ಅಡಿಯಲ್ಲಿ ರಚಿಸಲಾದ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿ;

(ಇ) "ಕುಲಾಧಿಪತಿ", "ಕುಲಪತಿ", "ಸಹಕುಲಪತಿ" ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ ಮತ್ತು ಸಹಕುಲಪತಿ;

(ಎಫ್) "ಕ್ಯಾಂಪಸ್" ಎಂದರೆ, ಅದು ಎಲ್ಲಾದರೂ ಇರಲಿ ವಿಶ್ವವಿದ್ಯಾಲಯವು ಸ್ಥಾಪಿಸಿದ, ನಿರ್ವಹಿಸುವ ಒಂದು ಕ್ಯಾಂಪಸ್;

(ಜಿ) "ಸಮಿತಿಗಳು" ಎಂದರೆ, ಈ ಅಧಿನಿಯಮದಡಿಯಲ್ಲಿ ರೂಪಿಸಲಾದ ಸಮಿತಿಗಳು ಅಥವಾ ಸಂದರ್ಭಾನುಸಾರವಾಗಿ ವಿಶ್ವವಿದ್ಯಾಲಯದ ವಿವಿಧ ಕಾರ್ಯಕರ್ತರು ರಚಿಸಿರುವ ಸಮಿತಿಗಳು ಮತ್ತು ಅದರಲ್ಲಿ ನಾಮನಿರ್ದೇಶನ ಸಮಿತಿ, ಹಣಕಾಸು ಸಮಿತಿ ಮತ್ತು ಅಂಥ ಇತರ ಸಮಿತಿಗಳು ಒಳಗೊಳ್ಳುತ್ತವೆ;

(ಎಚ್) "ಘಟಕ ಕಾಲೇಜು" ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುತ್ತಿರುವ ಒಂದು ಕಾಲೇಜು ಅಥವಾ ಸಂಸ್ಥೆ;

(ಐ) "ಹಣಕಾಸು ಸಮಿತಿ" ಎಂದರೆ, 27ನೇ ಪ್ರಕರಣದ ಅಡಿಯಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಹಣಕಾಸು ಸಮಿತಿ;

(ಜೆ) "ಸರ್ಕಾರ" ಎಂದರೆ, ಕರ್ನಾಟಕ ಸರ್ಕಾರ;

(ಕೆ) "ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳು" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ, ಅಖಿಲ ಭಾರತ ತಾಂತ್ರಿಕ ವಿದ್ಯಾಪರಿಷತ್ತು, ಭಾರತೀಯ ವೈದ್ಯಕೀಯ ಪರಿಷತ್ತು, ಭಾರತೀಯ ಔಷಧ ವಿಜ್ಞಾನ ಪರಿಷತ್ತು, ಭಾರತೀಯ ಕೃಷಿ ಸಂಶೋಧನಾ ಪರಿಷತ್ತು, ರಾಷ್ಟ್ರೀಯ ಮೌಲ್ಯಮಾಪನ ಮತ್ತು ಅಧಿಮಾನ್ಯತಾ ಪರಿಷತ್ತು, ರಾಷ್ಟ್ರೀಯ ಬೋಧಕ ಶಿಕ್ಷಣ ಪರಿಷತ್ತು, ದೂರಶಿಕ್ಷಣ ಪರಿಷತ್ತು, ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಪರಿಷತ್ತುಗಳಂಥವುಗಳು, ಉನ್ನತ ಶಿಕ್ಷಣದಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುವಂತೆ ನೋಡಿಕೊಳ್ಳುವುದಕ್ಕಾಗಿ ಹಾಗೂ ಗುಣಮಟ್ಟಗಳು ಮತ್ತು ಷರತ್ತುಗಳನ್ನು ವಿಧಿಸುವುದಕ್ಕಾಗಿ, ಕೇಂದ್ರ ಸರ್ಕಾರವು ಸ್ಥಾಪಿಸಿರುವ ಒಂದು ಸಂಸ್ಥೆ ಮತ್ತು ಇದರಲ್ಲಿ ಸರ್ಕಾರವೂ ಸೇರಿರುತ್ತದೆ;

(ಎಲ್) "ನಿಯಮಿಸಲಾದುದು" ಎಂದರೆ, ಈ ಅಧಿನಿಯಮದಡಿಯಲ್ಲಿ ಸರ್ಕಾರವು ರಚಿಸಲಾದ ನಿಯಮಗಳ ಮೂಲಕ ನಿಯಮಿಸಲಾದುದು;

(ಎಂ) "ಒಂದು ಘಟಕ ಕಾಲೇಜಿಗೆ ಸಂಬಂಧಪಟ್ಟಂತೆ ಪ್ರಾಂಶುಪಾಲರು" ಎಂದರೆ, ಘಟಕ ಕಾಲೇಜಿನ ಮುಖ್ಯಸ್ಥರು ಮತ್ತು ಪ್ರಾಂಶುಪಾಲರು ಇಲ್ಲದಿದ್ದಲ್ಲಿ ಅಥವಾ ನೇಮಕವಾದ ಪ್ರಾಂಶುಪಾಲರ ಗೈರುಹಾಜರಿಯಲ್ಲಿ, ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ತಾತ್ಕಾಲಿಕವಾಗಿ ನೇಮಕಗೊಂಡಿರುವ ಉಪಪ್ರಾಂಶುಪಾಲರು ಅಥವಾ ಯಾವೊಬ್ಬ ಇತರ ವ್ಯಕ್ತಿಯೂ ಇದರಲ್ಲಿ ಒಳಗೊಳ್ಳುತ್ತಾರೆ;

(ಎನ್) "ಕುಲಸಚಿವರು" ಎಂದರೆ, ವಿಶ್ವವಿದ್ಯಾಲಯದ ಕುಲಸಚಿವರು;

(ಒ) "ಪ್ರಾದೇಶಿಕ ಕೇಂದ್ರ" ಎಂದರೆ, ಯಾವುದೇ ಪ್ರದೇಶದಲ್ಲಿನ ಅಧ್ಯಯನ ಕೇಂದ್ರಗಳ ಕಾರ್ಯವನ್ನು ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ಮಾಡುವ ಉದ್ದೇಶಕ್ಕಾಗಿ ಮತ್ತು ಅಂಥ ಕೇಂದ್ರಕ್ಕೆ ವ್ಯವಸ್ಥಾಪನಾ ಮಂಡಳಿಯು ವಹಿಸಿಕೊಡಬಹುದಾದ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸುವುದಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಅಥವಾ ನಿರ್ವಹಿಸಿಕೊಂಡುಬರುವ ಒಂದು ಕೇಂದ್ರ;

(ಪಿ) "ಸಂಘ" ಎಂದರೆ ಒಂದು ನೋಂದಾಯಿತ ಸಂಘ ಮತ್ತು ಪ್ರಾಯೋಜಿತ ಸಂಸ್ಥೆಯಾಗಿರುವ ಶರಣಬಸವೇಶ್ವರ ವಿದ್ಯಾವರ್ಧಕ ಸಂಘ;

(ಕ್ಯೂ) ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ "ಪ್ರಾಯೋಜಕ ಪ್ರಾಧಿಕಾರ" ಅಥವಾ "ಪ್ರಾಯೋಜಕ ಸಂಸ್ಥೆ" ಎಂದರೆ, ಸಂಘ;

(ಆರ್) "ರಾಜ್ಯ" ಎಂದರೆ, ಕರ್ನಾಟಕ ರಾಜ್ಯ;

(ಎಸ್) "ಪರಿನಿಯಮಗಳು" ಮತ್ತು "ವಿನಿಯಮಗಳು" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಅನುಕ್ರಮವಾಗಿ ವಿಶ್ವವಿದ್ಯಾಲಯದ ಪರಿನಿಯಮಗಳು ಮತ್ತು ವಿನಿಯಮಗಳು;

(ಟಿ) "ಅಧ್ಯಯನ ಕೇಂದ್ರ" ಎಂದರೆ, ಶಿಕ್ಷಣದ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಅಗತ್ಯವಾದ ಬುದ್ಧಿವಾದ, ಸಲಹೆಗಳನ್ನು ನೀಡುವ ಅಥವಾ ಇತರ ಯಾವುದೇ ನೆರವನ್ನು ನೀಡುವ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಮತ್ತು ನಿರ್ವಹಿಸಿಕೊಂಡುಬಂದ ಒಂದು ಕೇಂದ್ರ;

(ಯು) "ಅಧ್ಯಾಪಕರು" ಎಂದರೆ, ಒಬ್ಬ ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಒಂದು ಘಟಕ ಕಾಲೇಜಿನಲ್ಲಿ ಬೋಧಿಸುವುದಕ್ಕೆ ಅಥವಾ ಸಂಶೋಧನೆ ನಡೆಸುವುದಕ್ಕೆ ಅಥವಾ ಸಂಶೋಧನೆಗೆ ಮಾರ್ಗದರ್ಶನ ನೀಡುವುದಕ್ಕೆ ನೇಮಕವಾದ ಅಂಥ ಇತರ ವ್ಯಕ್ತಿ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗವು ನಿಯಮಿಸಿದ ಗುಣಮಟ್ಟಗಳಿಗೆ ಅನುಸಾರವಾಗಿ ಇರುವ ಘಟಕ ಕಾಲೇಜಿನ ಪ್ರಾಂಶುಪಾಲರು ಇದರಲ್ಲಿ ಒಳಗೊಳ್ಳುತ್ತಾರೆ;

(ವಿ) "ವಿಶ್ವವಿದ್ಯಾಲಯ ಅನುದಾನಗಳ ಆಯೋಗ" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) 4ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ಆಯೋಗ;

(ಡಬ್ಲ್ಯೂ) "ವಿಶ್ವವಿದ್ಯಾಲಯ" ಎಂದರೆ, ಈ ಅಧಿನಿಯಮದಡಿಯಲ್ಲಿ ಸ್ಥಾಪಿಸಿ ನಿಗಮಿತಗೊಳಿಸಲಾದ ಶರಣಬಸವ ವಿಶ್ವವಿದ್ಯಾಲಯ;

(ಎಕ್ಸ್) "ಸಂದರ್ಶಕರು" ಎಂದರೆ, 13ನೇ ಪ್ರಕರಣದ ಅಡಿಯಲ್ಲಿ ನಿರ್ದಿಷ್ಟಪಡಿಸಿದ ವಿಶ್ವವಿದ್ಯಾಲಯದ ಸಂದರ್ಶಕರು.

## ಅಧ್ಯಾಯ– II

## ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

**3. ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ.**– (1) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಹಕ್ಕನ್ನು ಸಂಘವು ಹೊಂದಿರತಕ್ಕದ್ದು.

(2) ಸಂಘವು ರಾಜ್ಯ ಸರ್ಕಾರಕ್ಕೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವವನ್ನು ಸಲ್ಲಿಸತಕ್ಕದ್ದು.

(3) ಪ್ರಸ್ತಾವವು ಈ ಮುಂದಿನ ವಿವರಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಸಂಘದ ವಿವರಗಳೊಂದಿಗೆ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು;

(ii) ವಿಶ್ವವಿದ್ಯಾಲಯದ ವ್ಯಾಪ್ತಿ ಮತ್ತು ಸ್ಥಾನಮಾನ ಹಾಗೂ ಭೂಮಿಯ ಲಭ್ಯತೆ;

(iii) ಪ್ರಾರಂಭದ ದಿನಾಂಕದಿಂದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳಬೇಕೆಂದಿರುವ ಅಧ್ಯಯನ ಮತ್ತು ಸಂಶೋಧನಾ ಕಾರ್ಯಕ್ರಮಗಳ ಸ್ವರೂಪ ಮತ್ತು ಬಗೆಗಳು;

(iv) ಪ್ರಾರಂಭಿಸಬೇಕೆಂದು ಪ್ರಸ್ತಾಪಿಸಿರುವ ವ್ಯಾಸಂಗ ವಿಭಾಗಗಳು (ಫ್ಯಾಕಲ್ಟಿಗಳು), ಅಧ್ಯಯನ ಕ್ರಮಗಳು ಮತ್ತು ಸಂಶೋಧನೆಗಳ ಸ್ವರೂಪ;

(v) ಕಟ್ಟಡಗಳು, ಸಲಕರಣೆಗಳು ಮತ್ತು ರಚನಾ ಸೌಕರ್ಯಗಳನ್ನು ಒದಗಿಸುವಂಥ ಕ್ಯಾಂಪಸ್ ಅಭಿವೃದ್ಧಿ;

(vi) ಪ್ರಾರಂಭದ ದಿನಾಂಕದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಗಾಗಿ ಬಂಡವಾಳ ವೆಚ್ಚದ ಹಂತಗಳು;

(vii) ಬಾಬುವಾರು ಆವರ್ತಕ ವೆಚ್ಚ, ಆರ್ಥಿಕ ಮೂಲಗಳು ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ತಗಲುವ ಅಂದಾಜು ವೆಚ್ಚ;

(viii) ಸಂಪನ್ಮೂಲ ಸಂಗ್ರಹಣೆಗಾಗಿ ಯೋಜನೆ ಮತ್ತು ಅದಕ್ಕೆ ಬಂಡವಾಳದಿಂದ ತಗಲುವ ವೆಚ್ಚ ಹಾಗೂ ಪ್ರತಿಯೊಂದು ಮೂಲಕ್ಕೂ ಮರು ಸಂದಾಯ ಮಾಡುವ ರೀತಿ;

(ix) ವಿದ್ಯಾರ್ಥಿಗಳಿಂದ ಶುಲ್ಕ ವಸೂಲು ಮಾಡಿ ಆಂತರಿಕವಾಗಿ ನಿಧಿ ಸಂಗ್ರಹಿಸುವ ಯೋಜನೆ, ಸಲಹಾ ಸೇವೆ ಮತ್ತು ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಿಗೆ ಸಂಬಂಧಿಸಿದ ಇತರ ಚಟುವಟಿಕೆಗಳಿಂದ ನಿರೀಕ್ಷಿತ ವರಮಾನಗಳು ಮತ್ತು ಇತರ ನಿರೀಕ್ಷಿತ ವರಮಾನಗಳು;

(x) ಘಟಕವೊಂದಕ್ಕೆ ತಗಲುವ ವೆಚ್ಚದ ವಿವರಗಳು; ಆರ್ಥಿಕವಾಗಿ ದುರ್ಬಲವಾದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕ, ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿ ವೇತನದಲ್ಲಿ ನೀಡುವ ರಿಯಾಯಿತಿ ಅಥವಾ ವಿನಾಯತಿಯ ಪರಿಮಿತಿಯ ವಿವರಗಳನ್ನು ಮತ್ತು ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳಿಗೆ ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳು ಪ್ರಾಯೋಜಿಸಿದ ವಿದ್ಯಾರ್ಥಿಗಳಿಗೆ ಮತ್ತು ಭಾರತವನ್ನುಳಿದು ಇತರ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ವಿಧಿಸತಕ್ಕ ಶುಲ್ಕದ ದರಗಳು ಬೇರೆ ಬೇರೆ ಇದ್ದಲ್ಲಿ ಅವುಗಳನ್ನು ಸೂಚಿಸುವ ಶುಲ್ಕ ರಚನೆಯ ವಿವರಗಳು;

(xi) ಸಂಬಂಧಪಟ್ಟ ವಿದ್ಯಾ ವಿಭಾಗದಲ್ಲಿ ಎಷ್ಟು ವರ್ಷಗಳ ಅನುಭವ ಮತ್ತು ಪರಿಣತಿಯನ್ನು ಸಂಘವು ದೊರಕಿಸಿಕೊಡಲಿದೆ ಹಾಗೂ ಅದರ ಹಣಕಾಸಿನ ಸಂಪನ್ಮೂಲಗಳು;

(xii) ವಿಶ್ವವಿದ್ಯಾಲಯದಲ್ಲಿರುವ ಅಧ್ಯಯನ ಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕಾಗಿ ಇರುವ ವ್ಯವಸ್ಥೆ;

(xiii) ವಿಶ್ವವಿದ್ಯಾಲಯವು ಸ್ಥಾಪನೆಯಾಗುವುದಕ್ಕೆ ಮೊದಲು ನೆರವೇರಿಸಬೇಕೆಂದು ರಾಜ್ಯ ಸರ್ಕಾರವು ಅಗತ್ಯಪಡಿಸಬಹುದಾದ ಅಂಥ ಇತರ ಷರತ್ತುಗಳ ನೆರವೇರಿಕೆಯ ಹಂತ.

(4) ಸ್ವೀಕರಿಸಿದ ಪ್ರಸ್ತಾವಗಳನ್ನು ಪರೀಕ್ಷಿಸಲು ರಾಜ್ಯ ಸರ್ಕಾರವು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಪದನಿಮಿತ್ತ ಸದಸ್ಯರಾದ ಮೂರು ಸದಸ್ಯರುಗಳನ್ನು ಒಳಗೊಂಡ ಒಂದು ಪರಿಶೋಧನಾ ಸಮಿತಿಯನ್ನು ರಚಿಸತಕ್ಕದ್ದು ಮತ್ತು ಅದು ರಾಜ್ಯ ಸರ್ಕಾರಕ್ಕೆ ಶಿಫಾರಸ್ಸನ್ನು ಮಾಡತಕ್ಕದ್ದು.

**4. ವಿಶ್ವವಿದ್ಯಾಲಯದ ಸ್ಥಾಪನೆ.–** (1) ರಾಜ್ಯ ಸರ್ಕಾರವು ಪರಿಶೋಧನಾ ಸಮಿತಿಯು ಮಾಡಿದ ಶಿಫಾರಸ್ಸುಗಳನ್ನು ಪರಿಶೀಲಿಸಿದ ತರುವಾಯ ಮತ್ತು ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ,–

(i) ಸಂಘವು ಸಾಕಷ್ಟು ಮೂಲ ಸೌಕರ್ಯದೊಂದಿಗೆ ವಿಶ್ವವಿದ್ಯಾಲಯವೊಂದನ್ನು ನಡೆಸಲು ಸಮರ್ಥವಾಗಿದೆ ಎಂದು ಅದು ಮನಗಂಡರೆ;

(ii) ಪ್ರದೇಶಕ್ಕನುಸಾರವಾಗಿ ಕೆಳಗೆ ನಿರ್ದಿಷ್ಟ ಪಡಿಸಿದ ವ್ಯಾಪ್ತಿಗೆ ಭೂಮಿಯ ಒಡೆಯತನವನ್ನು ಹೊಂದಿರತಕ್ಕದ್ದು, ಎಂದರೆ:–

(ಎ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯೊಳಗಿದ್ದರೆ ಇಪ್ಪತ್ತೈದು ಎಕರೆಗಳು;

(ಬಿ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯಿಂದ ಹೊರಗೆ ಇದ್ದು ಆದರೆ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಪ್ರದೇಶದ ಒಳಗೆ ಇದ್ದರೆ ನಲವತ್ತು ಎಕರೆಗಳು;

(ಸಿ) ಭೂಮಿಯು (ಎ) ಮತ್ತು (ಬಿ) ಖಂಡಗಳಲ್ಲಿ ನಿರ್ದಿಷ್ಟಪಡಿಸಿದ ಸ್ಥಳಗಳನ್ನು ಹೊರತುಪಡಿಸಿದ್ದರೆ ಅರವತ್ತು ಎಕರೆಗಳಿಗಿಂತ ಕಡಿಮೆ ಇರತಕ್ಕದ್ದಲ್ಲ.

ಮೇಲೆ ನಿರ್ದಿಷ್ಟಪಡಿಸಿದ ಭೂಮಿಯು ಏಕ ಘಟಕ (ಸಿಂಗಲ್ ಬ್ಲಾಕ್) ದಲ್ಲಿರತಕ್ಕದ್ದು ಮತ್ತು ಇದು ಸಂಬಂಧಪಟ್ಟ ಸಂಘ / ಪ್ರತಿಷ್ಠಾನ / ಸಂಸ್ಥೆ / ವಿಶ್ವವಿದ್ಯಾಲಯದ ಹೆಸರಿನಲ್ಲಿರತಕ್ಕದ್ದು. 3ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ಅಗತ್ಯಪಡಿಸಲಾದಂತೆ ಒದಗಿಸಿದ ವಿವರಗಳ ಆಧಾರದ ಮೇಲೆ ಸರ್ಕಾರವು 47ನೇ ಪ್ರಕರಣದ ಅಡಿಯಲ್ಲಿ ನಿರ್ದಿಷ್ಟಪಡಿಸಿರುವ ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಬೇಕೆಂದು ಸಂಘಕ್ಕೆ ನಿರ್ದೇಶನ ನೀಡಬಹುದು.

(2) ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಸ್ಥಾಪನೆಯ ತರುವಾಯ, ರಾಜ್ಯ ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, "ಶರಣಬಸವ ವಿಶ್ವವಿದ್ಯಾಲಯ" ಎಂಬ ಹೆಸರಿನ ಏಕಾತ್ಮಕ ಸ್ವರೂಪದ ಒಂದು ವಿಶ್ವವಿದ್ಯಾಲಯವನ್ನು ರಾಜ್ಯದಲ್ಲಿ ಸ್ಥಾಪಿಸುವುದಕ್ಕೆ ಮಂಜೂರಾತಿಯನ್ನು ನೀಡಬಹುದು.

(3) ವಿಶ್ವವಿದ್ಯಾಲಯದ ಕೇಂದ್ರ ಕಾರ್ಯಸ್ಥಾನವು ಗುಲಬರ್ಗಾದಲ್ಲಿ ಇರತಕ್ಕದ್ದು. ವಿಶ್ವವಿದ್ಯಾಲಯವು ತನ್ನ ಕ್ಯಾಂಪಸ್ಸುಗಳನ್ನು ಅಥವಾ ಪ್ರಾದೇಶಿಕ ಕೇಂದ್ರಗಳನ್ನು, ಅಧ್ಯಯನ ಕೇಂದ್ರಗಳನ್ನು ಕರ್ನಾಟಕದ ಯಾವುದೇ ಭಾಗದಲ್ಲಿ ಹೊಂದಿರತಕ್ಕದ್ದು ಮತ್ತು ಆ ಬಗ್ಗೆ ರಾಜ್ಯ ಸರ್ಕಾರದ ಪೂರ್ವಾನುಮತಿಯನ್ನು ಪಡೆದುಕೊಳ್ಳುವುದಕ್ಕೊಳಪಟ್ಟು ಹಾಗೂ ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗನುಸಾರವಾಗಿ ಹೊಂದಿರತಕ್ಕದ್ದು.

(4) ಮೊದಲ ಕುಲಾಧಿಪತಿಯವರು, ಮೊದಲ ಕುಲಪತಿಯವರು, ಪ್ರಬಂಧಕ ಮಂಡಳಿಯ ಮೊದಲ ಸದಸ್ಯರುಗಳು, ವ್ಯವಸ್ಥಾಪನಾ ಮಂಡಳಿಯ ಹಾಗೂ ಶೈಕ್ಷಣಿಕ ಪರಿಷತ್ತಿನ ಮೊದಲ ಸದಸ್ಯರುಗಳು ಮತ್ತು ಇನ್ನು ಮುಂದೆ, ಅಂಥ ಅಧಿಕಾರಿಗಳು ಅಥವಾ ಸದಸ್ಯರುಗಳಾಗಬಹುದಾದಂಥ ಎಲ್ಲಾ ವ್ಯಕ್ತಿಗಳು, ಅಂಥ ಪದ ಅಥವಾ ಸದಸ್ಯತ್ವವನ್ನು ಹೊಂದಿರುವುದು ಮುಂದುವರೆಯುವವರೆಗೆ, ಒಂದು ನಿಗಮಿತ ನಿಕಾಯವನ್ನು ರಚಿಸತಕ್ಕದ್ದು ಮತ್ತು ಅದು ವಿಶ್ವವಿದ್ಯಾಲಯದ ಹೆಸರಿನಲ್ಲಿ ದಾವೆ ಹೂಡಬಹುದು ಮತ್ತು ದಾವೆಗೊಳಗಾಗಬಹುದು.

(5) (2)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಸ್ಥಾಪನೆಗೆ ಮಂಜೂರಾತಿಯಾದ ಮೇಲೆ, ವಿಶ್ವವಿದ್ಯಾಲಯದ ಉದ್ದೇಶಕ್ಕಾಗಿ, ಸಂಘವು ಆರ್ಜಿಸಿದ, ಸೃಜಿಸಿದ, ಏರ್ಪಾಟು ಮಾಡಿಕೊಂಡ ಅಥವಾ ಕಟ್ಟಲ್ಪಟ್ಟ ಭೂಮಿ ಮತ್ತು ಇತರ ಸ್ಥಿರ ಮತ್ತು ಚರ ಸ್ವತ್ತು, ವಿಶ್ವವಿದ್ಯಾಲಯದಲ್ಲಿ ನಿಹಿತವಾಗಿರತಕ್ಕದ್ದು.

(6) ವಿಶ್ವವಿದ್ಯಾಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದ ಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂಥ ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

(7) ವಿಶ್ವವಿದ್ಯಾಲಯದಲ್ಲಿನ ಭೂಮಿ, ಕಟ್ಟಡ ಮತ್ತು ಇತರ ಸ್ವತ್ತುಗಳನ್ನು ವಿಶ್ವವಿದ್ಯಾಲಯದ ಉದ್ದೇಶಗಳಿಗೆ ಆನುಷಂಗಿಕವಾಗಿರುವುದನ್ನು ಹೊರತುಪಡಿಸಿ ಇತರ ಯಾವುದೇ ಉದ್ದೇಶಕ್ಕಾಗಿ ಬಳಸತಕ್ಕದ್ದಲ್ಲ.

**5. ಅನುದಾನಗಳು ಮತ್ತು ಹಣಕಾಸು ನೆರವು.–** ವಿಶ್ವವಿದ್ಯಾಲಯವು ಸ್ವಂತ ಧನಮೂಲ ಉಳ್ಳದ್ದಾಗಿರತಕ್ಕದ್ದು ಮತ್ತು ರಾಜ್ಯದಿಂದ ಅಥವಾ ರಾಜ್ಯದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಇತರ ಸಂಸ್ಥೆ ಅಥವಾ ನಿಗಮದಿಂದ ಯಾವುದೇ ನಿರ್ವಹಣಾ ಸಹಾಯ ಅನುದಾನ ಅಥವಾ ಯಾವುದೇ ಹಣಕಾಸು ನೆರವನ್ನು ಹಕ್ಕಿನಿಂದ ಕೇಳತಕ್ಕದ್ದಲ್ಲ ಅಥವಾ ಅದನ್ನು ಪಡೆಯಲು ಹಕ್ಕನ್ನು ಹೊಂದಿರತಕ್ಕದ್ದಲ್ಲ:

ಪರಂತು, ರಾಜ್ಯವು,–

(ಎ) ಇತರ ರಾಜ್ಯ ಸರ್ಕಾರದ ಸಂಘಟನೆಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿರುವಂಥದ್ದೇ ಸಂಶೋಧನೆ, ಅಭಿವೃದ್ಧಿ ಮತ್ತಿತರ ಚಟುವಟಿಕೆಗಳಿಗಾಗಿ; ಅಥವಾ

(ಬಿ) ಸರ್ಕಾರದಿಂದ ನೆರವನ್ನು ಪಡೆಯುವ ಯಾವುದೇ ನಿರ್ದಿಷ್ಟ ಸಂಶೋಧನೆ ಅಥವಾ ಕಾರ್ಯಕ್ರಮಗಳಿಗಾಗಿ; ಮತ್ತು

(ಸಿ) ರಾಜ್ಯ ಕಾರ್ಯನೀತಿಯ ಬದಲಾವಣೆಗೆ ಒಳಪಟ್ಟು ಅಥವಾ ಅನ್ಯಥಾ ಇದೇ ಬಗೆಯ ವಿಶ್ವವಿದ್ಯಾಲಯಗಳಿಗಾಗಿ ಅಥವಾ ಅವುಗಳ ಪ್ರಯೋಜನಕ್ಕಾಗಿ,

–ಅನುದಾನದ ಮೂಲಕ ಅಥವಾ ಅನ್ಯಥಾ ಹಣಕಾಸು ಬೆಂಬಲವನ್ನು ಒದಗಿಸಬಹುದು:

3

ಮತ್ತು ಪರಂತು, ವಿಶ್ವವಿದ್ಯಾಲಯವು, ಯಾವುದೇ ಇತರ ಮೂಲದಿಂದ ಯಾವುದೇ ಆರ್ಥಿಕ ನೆರವನ್ನು ಸ್ವೀಕರಿಸಬಹುದು.

**6. ಘಟಕ ಕಾಲೇಜು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಅಥವಾ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದಕ್ಕೆ ಅಧಿಕಾರ.**– ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಐದು ವರ್ಷಗಳನ್ನು ಪೂರ್ಣಗೊಳಿಸಿದ ನಂತರ ವಿಶ್ವವಿದ್ಯಾಲಯ ಅನುದಾನ ಆಯೋಗದ ಮತ್ತು ಇತರ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ಗುಣಮಟ್ಟಗಳಿಗೆ ಒಳಪಟ್ಟು ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ವಿಶ್ವವಿದ್ಯಾಲಯವು, ರಾಜ್ಯದಲ್ಲಿ ತನಗೆ ಸೂಕ್ತವೆನಿಸುವಂಥ ಸ್ಥಳಗಳಲ್ಲಿ ಘಟಕ ಕಾಲೇಜುಗಳು, ಪ್ರಾದೇಶಿಕ ಕೇಂದ್ರಗಳು, ಹೆಚ್ಚುವರಿ ಕ್ಯಾಂಪಸ್‌ಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದಿರಬಹುದು.

**7. ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು.**– ವಿಶ್ವವಿದ್ಯಾಲಯವು, ತನ್ನ ಭವಿಷ್ಯದ್‌ದೃಷ್ಟಿ ಮತ್ತು ಧ್ಯೇಯೋದ್ದೇಶಗಳನ್ನು ಸಾಧಿಸಲು ಈ ಮುಂದಿನ ವಿಸ್ತೃತ ಕಾರ್ಯತಂತ್ರಗಳನ್ನು ಕೈಗೊಳ್ಳತಕ್ಕದ್ದು.–

(i) (ಎ) ಸಿವಿಲ್, ವಾಸ್ತು ಶಿಲ್ಪ (ಆರ್ಕಿಟೆಕ್ಚರ್), ಮೆಕ್ಯಾನಿಕಲ್, ಆಟೋಮೊಬೈಲ್, ಎಲೆಕ್ಟ್ರಿಕಲ್, ಎಲೆಕ್ಟ್ರಾನಿಕ್ಸ್ ಮತ್ತು ಸಂವಹನ (ಕಮ್ಯುನಿಕೇಷನ್), ಕಂಪ್ಯೂಟರ್ ಸೈನ್ಸ್ ಮತ್ತು ಇಂಜಿನಿಯರಿಂಗ್, ಮಾಹಿತಿ ತಂತ್ರಜ್ಞಾನ (ಇನ್‌ಫರ್‌ಮೇಷನ್ ಟೆಕ್ನಾಲಜಿ) 3–ಡಿಯನ್ನು ಒಳಗೊಂಡ ವಿನ್ಯಾಸ (ಡಿಸೈನ್) ಮತ್ತು ಮುದ್ರಣ ತಾಂತ್ರಿಕತೆ (ಪ್ರಿಂಟಿಂಗ್ ಟೆಕ್ನಾಲಜಿ), ಪರಿಸರ ಇಂಜಿನಿಯರಿಂಗ್ (ಎನ್ವಿರಾನ್ಮೆಂಟಲ್ ಇಂಜಿನಿಯರಿಂಗ್), ಜೈವಿಕ ತಂತ್ರಜ್ಞಾನ (ಬಯೋ–ಟೆಕ್ನಾಲಜಿ), ಬಾಹ್ಯಾಕಾಶ ತಂತ್ರಜ್ಞಾನ (ಸ್ಪೇಸ್ ಟೆಕ್ನಾಲಜಿ), ನ್ಯಾನೊ ಸಾಮಾಗ್ರಿಗಳು ಮತ್ತು ತಂತ್ರಜ್ಞಾನ (ಟೆಕ್ನಾಲಜಿ) ಇವುಗಳನ್ನು ಒಳಗೊಂಡ ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ ಮತ್ತು ಅಂತರ ವಿಷಯಗಳು ಮುಂತಾದವುಗಳನ್ನು ಒಳಗೊಂಡಂತೆ ಇತರ ಹೊಸದಾಗಿ ರೂಪುಗೊಳ್ಳುತ್ತಿರುವ ಯಾವುದೇ ಕ್ಷೇತ್ರಗಳು;

(ಬಿ) ವೈದ್ಯಕೀಯ, ದಂತ ವೈದ್ಯಕೀಯ, ಆಯುರ್ವೇದ, ಹೋಮಿಯೋಪತಿ, ನ್ಯಾಚುರೋಪತಿ, ಔಷಧ ತಯಾರಿಕಾ ಶಾಸ್ತ್ರ, ನರ್ಸಿಂಗ್ ಇವುಗಳನ್ನು ಒಳಗೊಂಡ ಆರೋಗ್ಯ ವಿಜ್ಞಾನಗಳು ಮತ್ತು ಅಂತರ್ ವಿಷಯಗಳು ಮುಂತಾದವುಗಳನ್ನು ಒಳಗೊಂಡಂತೆ ಹೊಸದಾಗಿ ರೂಪುಗೊಳ್ಳುತ್ತಿರುವ ಯಾವುದೇ ಇತರ ಕ್ಷೇತ್ರಗಳು;

(ಸಿ) ಕೃಷಿ ವಿಜ್ಞಾನ ಮತ್ತು ತಂತ್ರಜ್ಞಾನ ಶಾಲೆ ಅಥವಾ ಕಾಲೇಜು ಅಥವಾ ಕೇಂದ್ರ;

(ಡಿ) ವ್ಯವಹಾರ ನಿರ್ವಹಣೆ, ಪ್ರವಾಸೋದ್ಯಮ ನಿರ್ವಹಣೆ, ಹೋಟೆಲ್ ನಿರ್ವಹಣೆ, ಆತಿಥ್ಯ ನಿರ್ವಹಣೆ, ಆಸ್ಪತ್ರೆ ನಿರ್ವಹಣೆ, ವಿಪತ್ತು ನಿರ್ವಹಣೆ, ಅಪಾಯ ನಿರ್ವಹಣೆಗಳನ್ನು ಒಳಗೊಂಡ ನಿರ್ವಹಣೆ ಮತ್ತು ತಾಂತ್ರಿಕತೆ; ಮತ್ತು ಅಂತರ್ ವಿಷಯಗಳು ಮುಂತಾದವುಗಳನ್ನು ಒಳಗೊಂಡಂತೆ ಹೊಸದಾಗಿ ರೂಪುಗೊಳ್ಳುತ್ತಿರುವ ಯಾವುದೇ ಇತರ ಕ್ಷೇತ್ರಗಳು;

(ಇ) ಭೌತಶಾಸ್ತ್ರ, ಎಲೆಕ್ಟ್ರಾನಿಕ್ಸ್, ಗಣಿತ ಶಾಸ್ತ್ರ, ಕಂಪ್ಯೂಟರ್ ಸೈನ್ಸ್, ರಾಸಾಯನಿಕ ಮತ್ತು ಪರಿಸರ ವಿಜ್ಞಾನ, ಜೀವಿ ವಿಜ್ಞಾನ, ಭೂ ವಿಜ್ಞಾನ, ಬಾಹ್ಯಾಕಾಶ ವಿಜ್ಞಾನ, ನ್ಯಾನೋ ವಿಜ್ಞಾನ ಮತ್ತು ನ್ಯಾನೋ ಸಾಮಾಗ್ರಿಗಳನ್ನೂ ಒಳಗೊಂಡಂತೆ ನಿಸರ್ಗ ವಿಜ್ಞಾನ ಮತ್ತು ಅಂತರ್ ವಿಷಯಗಳು ಮುಂತಾದವುಗಳನ್ನು ಒಳಗೊಂಡಂತೆ ಅಧ್ಯಯನದ ಹೊಸದಾಗಿ ರೂಪುಗೊಳ್ಳುತ್ತಿರುವ ಯಾವುದೇ ಇತರ ಕ್ಷೇತ್ರ;

(ಎಫ್) ಇತಿಹಾಸ, ಕನ್ನಡ, ಅರ್ಥಶಾಸ್ತ್ರ, ರಾಜಕೀಯ ಶಾಸ್ತ್ರ, ಪತ್ರಿಕೋದ್ಯಮ, ಪ್ರವಾಸೋದ್ಯಮ, ಕಾನೂನು, ತತ್ತ್ವಶಾಸ್ತ್ರ, ಪುರಾಣಗಳು ಮತ್ತು ಪ್ರವಚನಗಳು, ಸಂಗೀತ, ಕಲೆ, 3–ಡಿ ವಿನ್ಯಾಸವನ್ನು ಒಳಗೊಂಡ ಫ್ಯಾಶನ್ ವಿನ್ಯಾಸ, ಆ್ಯನಿಮೇಷನ್, ಸಂಸ್ಕೃತಿ, ಸಾಮಾಜಿಕ ಕಾರ್ಯಗಳು, ಸಂಸ್ಕೃತ, ಆಂಗ್ಲ, ಇತರ ಭಾರತೀಯ ಮತ್ತು ವಿದೇಶಿ ಭಾಷೆಗಳನ್ನು ಒಳಗೊಂಡ ಮಾನವಿಕ ಶಾಸ್ತ್ರಗಳು ಮತ್ತು ಸಮಾಜ ವಿಜ್ಞಾನಗಳು ಹಾಗೂ ಅಂತರ ವಿಷಯ ಕ್ಷೇತ್ರಗಳನ್ನೂ ಒಳಗೊಂಡ ಹೊಸದಾಗಿ ರೂಪುಗೊಳ್ಳುತ್ತಿರುವ ಯಾವುದೇ ಇತರ ಕ್ಷೇತ್ರಗಳು;

(ಜಿ) ವಿಶ್ವದಾದ್ಯಂತ ಅಧ್ಯಯನದ ಹೊಸದಾಗಿ ರೂಪುಗೊಳ್ಳುತ್ತಿರುವ ಯಾವುದೇ ಇತರ ಕ್ಷೇತ್ರಗಳು ಅಥವಾ ಅಧ್ಯಯನದ ವಿಷಯಗಳು ಅಥವಾ ಕ್ಷೇತ್ರಗಳು.

-ಇಂಥ ವಿಷಯಗಳಲ್ಲಿ ಪ್ರಾರಂಭಿಕ ಶಿಕ್ಷಣ, ಪ್ರೌಢಶಿಕ್ಷಣ, ಉನ್ನತ ಶಿಕ್ಷಣಗಳಂಥ ವಿವಿಧ ಹಂತಗಳಲ್ಲಿ ಶಿಕ್ಷಣ, ಬೋಧನೆ ಮತ್ತು ಬರವಣಿಗೆ ಮತ್ತು ಓದನ್ನು ಒಳಗೊಂಡಂಥ ಕಲಿಕೆ, ತರಬೇತಿ, ಸಂಶೋಧನೆ ಮತ್ತು ಅಭಿವೃದ್ಧಿಗಳಿಗೆ ಅವಕಾಶವನ್ನು ಕಲ್ಪಿಸಿ ಜ್ಞಾನದ ಜಗತ್ತಿನ ಪರಿಧಿಯನ್ನು ವಿಸ್ತರಿಸುವುದು.

(ii) ಬೋಧಕರಿಗಾಗಿ, ಬೋಧಕ ಶಿಕ್ಷಕರಿಗಾಗಿ, ಉನ್ನತ ಹಾಗೂ ವೃತ್ತಿ ಶಿಕ್ಷಣ ಕ್ಷೇತ್ರಗಳಲ್ಲಿನ ಬೋಧಕರಿಗಾಗಿ, ಉನ್ನತ ಗುಣಮಟ್ಟದ ತರಬೇತಿ, ಸಾಮರ್ಥ್ಯ ನಿರ್ಮಾಣ ಮತ್ತು ಅಭಿವೃದ್ಧಿ ವ್ಯವಸ್ಥೆಯನ್ನು ಶಿಕ್ಷಣ ಮತ್ತು ಇತರ ವ್ಯವಸ್ಥೆಗಳಲ್ಲಿನ ರಾಜಕೀಯ ನಾಯಕರು, ಆಡಳಿತಗಾರರು ಮತ್ತು ಅಭಿವೃದ್ಧಿ ವೃತ್ತಿಪರರಿಗಾಗಿ ನಾಯಕತ್ವದ ತರಬೇತಿಯನ್ನು ವಿನ್ಯಾಸಗೊಳಿಸುವುದು ಮತ್ತು ನೀಡುವುದು;

(iii) (ಎ) ನಿರ್ಧರಣೆಯ ಆಧುನಿಕ ವಿಧಾನಗಳನ್ನು ಒಳಗೊಂಡಂತೆ ವಿವಿಧ ವಿಧಾನಗಳ ಮೂಲಕ ಮೌಲ್ಯಮಾಪನ ಮಾಡಿದ ಶೈಕ್ಷಣಿಕ ಕಾರ್ಯವನ್ನು ಯಶಸ್ವಿಯಾಗಿ ಪೂರೈಸಿರುವುದರ ಆಧಾರದ ಮೇಲೆ; ಮತ್ತು

(ಬಿ) ಮೂಲ ಪುಸ್ತಕ ಅಥವಾ ಪುಸ್ತಕಗಳ ಬರವಣಿಗೆ, ಸಂಶೋಧನಾ ಲೇಖನಗಳ ಪ್ರಕಟಣೆ, ಕಲಿಕೆಯ ವಿವಿಧ ಕ್ಷೇತ್ರಗಳಲ್ಲಿನ ತಜ್ಞ ವ್ಯಕ್ತಿಗಳು ಸಾಂಸ್ಕೃತಿಕ ಮತ್ತು ಆಧ್ಯಾತ್ಮಿಕ ಕ್ಷೇತ್ರಗಳಲ್ಲಿನ ಸೇವೆಗಳಂಥ ಅಸಾಧಾರಣ ಕೊಡುಗೆಗಳನ್ನು ನೀಡಿದುದರ ಆಧಾರದ ಮೇಲೆ,

-ಪದವಿಗಳನ್ನು, ಪಿಜಿ ಡಿಪ್ಲೊಮೊಗಳನ್ನು ಒಳಗೊಂಡ ಡಿಪ್ಲೊಮೊಗಳನ್ನು, ದ್ವಿ ಪದವಿ, ಪ್ರೊಗ್ರಾಮ್‌ಗಳನ್ನು, ಸಂಯೋಜಿತ ಕೋರ್ಸುಗಳನ್ನು, ಪ್ರಮಾಣ ಪತ್ರಗಳನ್ನು ಮತ್ತು ಪಾರಿತೋಷಕಗಳು, ಯಶೋಪತ್ರ ಪ್ರದಾನದಂಥ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು.

(iv) ವಿದ್ಯಾರ್ಥಿಗಳಿಗೆ, ಬೋಧಕ ಸದಸ್ಯರಿಗೆ ಮತ್ತು ಇತರರಿಗೆ ನಿರ್ದಿಷ್ಟ ಶೈಕ್ಷಣಿಕ ಮತ್ತು ಸಂಶೋಧನಾ ಕಾರ್ಯಕ್ರಮಗಳು, ತರಬೇತಿ ಕಾರ್ಯಕ್ರಮಗಳು ಮತ್ತು ವಿಚಾರ ವಿನಿಮಯ ಕಾರ್ಯಕ್ರಮಗಳನ್ನು ಪರಿಕಲ್ಪಿಸಲು, ವಿನ್ಯಾಸಗೊಳಿಸಲು, ಅಭಿವೃದ್ಧಿಪಡಿಸಲು ಮತ್ತು ನೀಡಲು ಯಾವುವೇ ಇತರ ವಿಶ್ವವಿದ್ಯಾಲಯಗಳು ಸಂಶೋಧನಾ ಸಂಸ್ಥೆಗಳು, ಲಾಭರಹಿತ ಸಂಘಟನೆಗಳು, ಕೈಗಾರಿಕಾ ಸಂಘ, ವೃತ್ತಿಪರ ಸಂಘಗಳು ಅಥವಾ ಇತರ ಸಂಘಗಳೊಂದಿಗೆ ಸಹಯೋಗವನ್ನು ಕಲ್ಪಿಸುವುದು;

(v) ಉಪನ್ಯಾಸ ಮಾಲಿಕೆಗಳು, ವಿಚಾರ ಸಂಕಿರಣಗಳು, ಸಮ್ಮೇಳನಗಳು, ಕಾರ್ಯಾಂಗ ಶಿಕ್ಷಣ ಕಾರ್ಯಕ್ರಮಗಳು, ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳು, ಪ್ರಕಟಣೆಗಳು ಮತ್ತು ತರಬೇತಿ ಕಾರ್ಯಕ್ರಮಗಳು ಮತ್ತು ಕಾರ್ಯಸೂಚಿಗಳ ಮೂಲಕ ಜ್ಞಾನ ಪ್ರಸಾರ ಮಾಡುವುದು ಮತ್ತು ಶಿಕ್ಷಣ ಮತ್ತು ತತ್ಸಂಬಂಧಿತ ಅಭಿವೃದ್ಧಿ ಕ್ಷೇತ್ರಗಳ ವಿಷಯಗಳ ಬಗ್ಗೆ ಸಾರ್ವಜನಿಕ ಚರ್ಚೆಯನ್ನು ಏರ್ಪಡಿಸುವುದು;

(vi) ಒಂದೇ ತೆರನಾದ ದೃಷ್ಟಿ, ಗುರಿ, ಕಾರ್ಯತಂತ್ರದ ರಚನೆ ಮತ್ತು ಉದ್ದೇಶಗಳನ್ನು ಹೊಂದಿರುವ ಯಾವುದೇ ಇತರ ಸಂಸ್ಥೆ ಅಥವಾ ಸಂಸ್ಥೆಗಳೊಂದಿಗಿನ ಸಹಭಾಗಿತ್ವ, ಸಹಯೋಗ, ಸಹಕಾರ, ಸಹ-ಪಾಲುದಾರಿಕೆ, ಕಾರ್ಯತಂತ್ರ ಅಥವಾ ಪರಸ್ಪರ ಅನುಕೂಲಕರವಾದಂಥ ಯಾವುದೇ ವಿಧಾನದಿಂದ ವಿಶ್ವವಿದ್ಯಾಲಯದ ಬೋಧಕ ವೃಂದ (ಫ್ಯಾಕಲ್ಟಿ), ಸಂಶೋಧಕರು ಮತ್ತು ಪೂರಕ ಸಿಬ್ಬಂದಿಯ ಸುಧಾರಣೆ ಮತ್ತು ತರಬೇತಿಗಾಗಿ, ಕಾರ್ಯಕ್ರಮಗಳನ್ನು ಪ್ರಾರಂಭಿಸುವುದು ಮತ್ತು ಕೈಗೊಳ್ಳುವುದು;

(vii) ಯಾವುದೇ ಸಂಸ್ಥೆಯೊಂದಿಗೆ ಜೊತೆಗೂಡಿ ಸಂಶೋಧನೆಯನ್ನು ನಡೆಸುವುದು ಮತ್ತು ಸಮರ್ಥನೆಗೊಳಿಸುವುದು.

(viii) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದಕ್ಕಾಗಿ ಮತ್ತು ಉತ್ತೇಜಿಸುವುದಕ್ಕಾಗಿ ಅವಶ್ಯಕವಾದ ಮತ್ತು ಯುಕ್ತವಾದ ಕ್ರಮಗಳನ್ನು ಕೈಗೊಳ್ಳುವುದು;

(ix) ಶಿಕ್ಷಣ ಮತ್ತು ಇತರ ಅಭಿವೃದ್ಧಿ ವಲಯಗಳನ್ನು ವಿಸ್ತರಿಸುವುದಕ್ಕಾಗಿ ಸರ್ಕಾರವು ಅನುಮೋದಿಸಬಹುದಾದಂತೆ ಯಾವುವೇ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದು.

8. ವಿಶ್ವವಿದ್ಯಾಲಯದ ಅಧಿಕಾರಗಳು.- ವಿಶ್ವವಿದ್ಯಾಲಯವು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

H

(i) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗೆ ಅನುಸಾರವಾಗಿ ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿರ್ಧರಿಸಬಹುದಾದ ಅಂಥ ಕ್ಯಾಂಪಸ್ಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಕರ್ನಾಟಕದಲ್ಲಿ ಸ್ಥಾಪಿಸುವುದು ಮತ್ತು ನಿರ್ವಹಿಸುವುದು;

(ii) ವಿಶ್ವವಿದ್ಯಾಲಯದ ಉದ್ದೇಶವನ್ನು ಕಾರ್ಯರೂಪಕ್ಕೆ ತರುವಲ್ಲಿ ಅಗತ್ಯವಾಗಬಹುದಾದ ಅಥವಾ ಕಾರ್ಯಸಾಧ್ಯವಾಗಬಹುದಾದ ಎಲ್ಲಾ ಅಂಥ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು;

(iii) ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಮತ್ತು ಷರತ್ತುಗಳಿಗೊಳಪಟ್ಟು ಪದವಿಗಳು ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರದಾನಮಾಡುವುದು;

(iv) ಪರಿನಿಯಮಗಳನ್ವಯ ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿ ವೇತನಗಳು ಮತ್ತು ಬಹುಮಾನಗಳು, ಅವಾರ್ಡುಗಳು, ಪಾರಿತೋಷಕಗಳು ಇತ್ಯಾದಿಗಳನ್ನು ಸ್ಥಾಪಿಸುವುದು ಮತ್ತು ನೀಡುವುದು;

(v) ಪರಿನಿಯಮಗಳಲ್ಲಿ ಅಥವಾ ಸಂದರ್ಭಾನುಸಾರವಾಗಿ ನಿಯಮಗಳಲ್ಲಿ ನಿಗದಿಪಡಿಸಬಹುದಾದ ಅಂಥ ಶುಲ್ಕಗಳು, ಬಿಲ್ಲುಗಳು, ಖರೀದಿ ಪಟ್ಟಿಗಳನ್ನು ಕೇಳಿಪಡೆದುಕೊಳ್ಳುವುದು ಮತ್ತು ಸ್ವೀಕರಿಸುವುದು ಹಾಗೂ ಚಾರ್ಜುಗಳನ್ನು ವಸೂಲು ಮಾಡುವುದು;

(vi) ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಪಠ್ಯೇತರ ಚಟುವಟಿಕೆಗಳಿಗೆ ಅವಕಾಶಗಳನ್ನು ಕಲ್ಪಿಸುವುದು;

(vii) ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಕ್ಯಾಂಪಸುಗಳ, ಪ್ರಾದೇಶಿಕ ಕೇಂದ್ರಗಳ, ಅಧ್ಯಯನ ಕೇಂದ್ರಗಳ ಬೋಧಕ ಸಿಬ್ಬಂದಿ (ಫ್ಯಾಕಲ್ಟಿ), ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವುದು;

(viii) ವಿಶ್ವವಿದ್ಯಾಲಯದ ಅಥವಾ ಒಂದು ಘಟಕ ಕಾಲೇಜಿನ ಅಥವಾ ಕ್ಯಾಂಪಸ್ಸಿನ, ಪ್ರಾದೇಶಿಕ ಕೇಂದ್ರದ, ಅಧ್ಯಯನ ಕೇಂದ್ರದ ಉದ್ದೇಶಕ್ಕಾಗಿ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದಿರುವ, ಯಾವುದೇ ರೀತಿಯ ಸ್ವಯಂ ದೇಣಿಗೆಗಳು ಮತ್ತು ಕೊಡುಗೆಗಳನ್ನು ಸ್ವೀಕರಿಸುವುದು ಮತ್ತು ಸಂಘದ ಮತ್ತು ದತ್ತಿಯ ಸ್ವತ್ತುಗಳೂ ಸೇರಿದಂತೆ, ಯಾವುದೇ ಚರ ಅಥವಾ ಸ್ಥಿರ ಸ್ವತ್ತನ್ನು ಆರ್ಜಿಸುವುದು, ಹೊಂದಿರುವುದು, ನಿರ್ವಹಿಸುವುದು, ನಡೆಸುವುದು ಮತ್ತು ಹಸ್ತಾಂತರ ಮಾಡುವುದು;

(ix) ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸುವುದು ಹಾಗೂ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ ವಿದ್ಯಾರ್ಥಿಗಳಿಗೆ ವಸತಿ ಸ್ಥಳಗಳನ್ನು ಗುರುತು ಮಾಡುವುದು;

(x) ವಸತಿಯ ಮೇಲ್ವಿಚಾರಣೆ ಮಾಡುವುದು ಮತ್ತು ನಿಯಂತ್ರಣ ಮಾಡುವುದು ಹಾಗೂ ವಿದ್ಯಾರ್ಥಿಗಳು ಮತ್ತು ಎಲ್ಲಾ ಪ್ರವರ್ಗಗಳ ಸಿಬ್ಬಂದಿಗಳಲ್ಲಿ ಶಿಸ್ತು ನಿಯಂತ್ರಣ ಮಾಡುವುದು ಮತ್ತು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ನಡತೆ ಸಂಹಿತೆಯನ್ನು ರೂಪಿಸುವುದೂ ಒಳಗೊಂಡಂತೆ, ಅಂಥ ಸಿಬ್ಬಂದಿಗಳ ಸೇವಾಷರತ್ತುಗಳನ್ನು ನಿರೂಪಿಸುವುದು;

(xi) ಶೈಕ್ಷಣಿಕ, ಆಡಳಿತ ಮತ್ತು ಬೆಂಬಲ ಸಿಬ್ಬಂದಿಯ ಹುದ್ದೆಗಳನ್ನು ಮತ್ತು ಇತರ ಅವಶ್ಯಕ ಹುದ್ದೆಗಳನ್ನು ಸೃಜಿಸುವುದು;

(xii) ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನಿರ್ಧರಿಸಬಹುದಾದ ಅಂಥ ರೀತಿಯಲ್ಲಿ ಮತ್ತು ಅಂಥ ಉದ್ದೇಶಗಳಿಗಾಗಿ ಇತರ ವಿಶ್ವವಿದ್ಯಾಲಯಗಳೊಡನೆ ಸಹಕರಿಸುವುದು ಮತ್ತು ಸಹಯೋಗವನ್ನು ಹೊಂದುವುದು;

(xiii) ಶಿಕ್ಷಕರಿಗೆ, ಪಾಠಗಳನ್ನು ರಚಿಸುವವರಿಗೆ, ಮೌಲ್ಯಮಾಪಕರಿಗೆ ಮತ್ತು ಇತರ ಶೈಕ್ಷಣಿಕ ಸಿಬ್ಬಂದಿಗೆ ಪುನರ್ಮನನ ವ್ಯಾಸಂಗ ಕ್ರಮಗಳು, ಅಭಿಮುಖ ವ್ಯಾಸಂಗ ಕ್ರಮಗಳು, ಕಾರ್ಯಾಗಾರಗಳು, ವಿಚಾರಗೋಷ್ಠಿಗಳು ಮತ್ತು ಇತರ ಕಾರ್ಯಕ್ರಮಗಳನ್ನು ಏರ್ಪಡಿಸುವುದು ಮತ್ತು ನಡೆಸುವುದು;

(xiv) ಶೈಕ್ಷಣಿಕ ಪರಿಷತ್ತಿನ ಅನುಮೋದನೆಯೊಂದಿಗೆ ವಿಶ್ವವಿದ್ಯಾಲಯಕ್ಕೆ ಅಥವಾ ಘಟಕ ಕಾಲೇಜಿಗೆ, ಪ್ರಾದೇಶಿಕ ಕೇಂದ್ರಗಳಿಗೆ, ಅಧ್ಯಯನ ಕೇಂದ್ರಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮತ್ತು ಈ ಅಧಿನಿಯಮದಲ್ಲಿ ಕಲ್ಪಿಸಿದ ವ್ಯಾಪ್ತಿಗಿಂತ ಕಡಿಮೆಯಿಲ್ಲದಂತೆ ಕರ್ನಾಟಕದ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮಾನಕ ಗುಣಮಟ್ಟಗಳನ್ನು ನಿರ್ಧರಿಸುವುದು;

(xv) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಕಾರ್ಯರೂಪಕ್ಕೆ ತರಲು ಅವಶ್ಯವಾಗಬಹುದಾದಂಥ ಇತರ ಎಲ್ಲಾ ಕ್ರಮಗಳನ್ನು ಅಥವಾ ಕಾರ್ಯಗಳನ್ನು, ಅವು ಮೇಲೆ ಹೇಳಿದ ಅಧಿಕಾರಗಳಿಗೆ ಪ್ರಾಸಂಗಿಕವಾಗಿರಲಿ ಅಥವಾ ಇಲ್ಲದಿರಲಿ, ಕೈಗೊಳ್ಳುವುದು;

(xvi) ಪರೀಕ್ಷೆಗಳ ಆಧಾರದ ಮೇಲೆ ಅಥವಾ ಸರ್ಕಾರದಿಂದ ಅನುಮೋದಿತವಾದ ಇತರ ಯಾವುದೇ ಮೌಲ್ಯಮಾಪನ ವಿಧಾನದ ಆಧಾರದ ಮೇಲೆ ನೀಡಲು ಪದವಿಗಳು, ಡಿಪ್ಲೋಮಾಗಳು, ಪ್ರಮಾಣಪತ್ರಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಸ್ಥಾಪಿಸುವುದು;

(xvii) ಫಿಲಂಗಳು, ಕ್ಯಾಸೆಟ್‌ಗಳು, ಧ್ವನಿಸುರುಳಿಗಳು, ದೃಶ್ಯಸುರುಳಿಗಳು, ಸಿ.ಡಿ., ವಿ.ಸಿ.ಡಿ. ಮತ್ತು ಇತರ ತಂತ್ರಾಂಶಗಳೂ ಹಾಗೂ ಇತರ ಸಂಬಂಧಿತ ವಿದ್ಯುನ್ಮಾನ ಮತ್ತು ಮುದ್ರಣ ಮಾಧ್ಯಮವೂ ಸೇರಿದಂತೆ ಬೋಧಕ ಸಾಮಗ್ರಿಗಳನ್ನು ತಯಾರಿಸುವುದಕ್ಕಾಗಿ ಅವಕಾಶ ಕಲ್ಪಿಸುವುದು;

(xviii) ಪ್ರಬಂಧಕ ಮಂಡಳಿಯ ಅನುಮೋದನೆಯೊಡನೆ ವಿಶ್ವವಿದ್ಯಾಲಯದ ಉದ್ದೇಶಗಳಿಗಾಗಿ ವಿಶ್ವವಿದ್ಯಾಲಯದ ಸ್ವತ್ತುಗಳನ್ನು ಭದ್ರತೆಯಾಗಿ ನೀಡಿ ಅಥವಾ ನೀಡದೆ ಹಣವನ್ನು ಪಡೆಯುವುದು, ಸಂಗ್ರಹಿಸುವುದು, ಚಂದಾದಾರರಾಗುವುದು ಮತ್ತು ಸಾಲ ಪಡೆಯುವುದು;

(xix) ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುವೇ ಇತರ ಶೈಕ್ಷಣಿಕ ಸಂಸ್ಥೆಗಳ ಆಡಳಿತವನ್ನು ಪಡೆದುಕೊಳ್ಳುವುದು, ವಹಿಸಿಕೊಳ್ಳುವುದು ಮತ್ತು ನಡೆಸುವುದು;

(xx) ವ್ಯವಸ್ಥಾಪನಾ ಮಂಡಳಿಯ ಪೂರ್ವಾನುಮೋದನೆಯೊಂದಿಗೆ ಸ್ವತ್ತುಗಳನ್ನು ಆರ್ಜಿಸುವುದು;

(xxi) ವಿಶ್ವವಿದ್ಯಾಲಯದ ಮೇಲಿನ ಉದ್ದೇಶಗಳಿಗೆ ಸಂಬಂಧಿಸಿದ ಅಥವಾ ಪ್ರಾಸಂಗಿಕವಾದ ಯಾವುದೇ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು.

**9. ವಿಶ್ವವಿದ್ಯಾಲಯವು ಎಲ್ಲಾ ವರ್ಗಗಳು, ಜಾತಿಗಳು, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲರಿಗೂ ಮುಕ್ತವಾಗಿರತಕ್ಕದ್ದು.–** ವಿಶ್ವವಿದ್ಯಾಲಯದ ಪ್ರವೇಶಗಳು ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲಾ ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು. ಎಲ್ಲಾ ಪ್ರವೇಶಗಳನ್ನು ಅರ್ಹತಾ ಪರೀಕ್ಷೆಗಳಲ್ಲಿನ ಅರ್ಹತೆಯ ಆಧಾರದ ಮೇಲೆ ಮಾಡತಕ್ಕದ್ದು:

ಪರಂತು, ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳ ಪ್ರವೇಶದಲ್ಲಿ ಶೇಕಡಾ ನಲವತ್ತರಷ್ಟನ್ನು ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ಮೀಸಲಿಡತಕ್ಕದ್ದು ಮತ್ತು ಪ್ರವೇಶಗಳನ್ನು ರಾಜ್ಯ ಸರ್ಕಾರವು ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡತಕ್ಕದ್ದು ಮತ್ತು ಸೀಟುಗಳನ್ನು ಅರ್ಹತೆ ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ರೂಪಿಸುವ ಮೀಸಲಾತಿ ನೀತಿಗೆ ಅನುಸಾರವಾಗಿ ಹಂಚಿಕೆ ಮಾಡತಕ್ಕದ್ದು:

ಮತ್ತು ಪರಂತು, ಯಾವುದೇ ಕೋರ್ಸಿನಲ್ಲಿ ಹತ್ತಕ್ಕಿಂತ ಕಡಿಮೆ ಸೀಟುಗಳು ಇರುವಲ್ಲಿ, ಸ್ನಾತಕೋತ್ತರ, ಇಂಥ ಕೋರ್ಸುಗಳನ್ನು ಒಟ್ಟಿಗೆ ಒಂದುಗೂಡಿಸುವ ಮೂಲಕ ಮೀಸಲಿಡತಕ್ಕದ್ದು ಮತ್ತು ಯಾವುದೇ ಕೋರ್ಸಿನಲ್ಲಿ ಮೂರು ಸೀಟುಗಳಿಗಿಂತ ಕಡಿಮೆ ಇರುವಲ್ಲಿ, ಅವುಗಳನ್ನು ಸುತ್ತುಸರದಿಯಲ್ಲಿ ಮೀಸಲಿಡತಕ್ಕದ್ದು.

**10. ರಾಷ್ಟ್ರೀಯ ಅಧಿಮಾನ್ಯತೆ.–** ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಆದಷ್ಟು ಬೇಗನೆ ಸಂಬಂಧಪಟ್ಟ ಶಾಸನಾತ್ಮಕ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳಿಂದ ಅಧಿಮಾನ್ಯತೆಯನ್ನು ಕೋರತಕ್ಕದ್ದು ಮತ್ತು ಖಾಸಗಿ ವಿಶ್ವವಿದ್ಯಾಲಯಗಳು ನಡೆಸುವ ಎಲ್ಲಾ ಕೋರ್ಸುಗಳು ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ವಿನಿಯಮಗಳಿಗೆ ಅನುಸಾರವಾಗಿ ಇರತಕ್ಕದ್ದು.

**11. ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು.–** ಪ್ರಾಯೋಜಕ ಸಂಸ್ಥೆಯು ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದಂತೆ ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಇವುಗಳಲ್ಲಿ ಪ್ರತಿಯೊಂದನ್ನು ಪ್ರಾಯೋಜಕ ಸಂಸ್ಥೆಯು ತನ್ನ ವಿವೇಚನಾನುಸಾರ ಚಲಾಯಿಸಬಹುದು, ಎಂದರೆ:–

(i) ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಪುನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(ii) ವಿಶ್ವವಿದ್ಯಾಲಯದ ಪ್ರಥಮ ಪ್ರಬಂಧಕ ಮಂಡಳಿಯನ್ನು ರಚಿಸುವುದು;

(iii) ಪ್ರಬಂಧಕ ಮಂಡಳಿಯ ಅಧ್ಯಕ್ಷರನ್ನು ನಾಮನಿರ್ದೇಶಿಸುವುದು;

(iv) ಪ್ರಬಂಧಕ ಮಂಡಳಿಯ ಸದಸ್ಯರಾಗಿ ಮೂರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(v) ವ್ಯವಸ್ಥಾಪನಾ ಮಂಡಳಿಯ ಸದಸ್ಯರಾಗಿ ಇಬ್ಬರು ವ್ಯಕ್ತಿಗಳನ್ನು ನಾಮ ನಿರ್ದೇಶಿಸುವುದು;

(vi) ವಿಶ್ವವಿದ್ಯಾಲಯದ ದತ್ತಿ ನಿಧಿಗೆ ದೇಣಿಗೆ ನೀಡಲು ನಿಧಿ ಮೂಲಗಳನ್ನು ನಿರ್ಧರಿಸುವುದು;

(vii) ವಿಶ್ವವಿದ್ಯಾಲಯದ ಹಣದ ವಿನಿಯೋಗ ಮತ್ತು ವೆಚ್ಚ ಮಾಡುವುದನ್ನು ನಿರ್ಧರಿಸುವುದು;

(viii) ಪ್ರಬಂಧಕ ಮಂಡಳಿಯ ಸಭೆಯಲ್ಲಿಯ ಯಾವುವೇ ವಿವಾದಗಳನ್ನು ಈ ಅಧಿನಿಯಮದಲ್ಲಿ ಉಪಬಂಧಿಸಿರುವ ವಿಧಾನದಲ್ಲಿ ಬಗೆಹರಿಸುವುದು;

## ಅಧ್ಯಾಯ – III

## ವಿಶ್ವವಿದ್ಯಾಲಯದ ಅಧಿಕಾರಿಗಳು

12. **ವಿಶ್ವವಿದ್ಯಾಲಯದ ಅಧಿಕಾರಿಗಳು.–** ಈ ಮುಂದಿನವರು ವಿಶ್ವವಿದ್ಯಾಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:–

(i) ಸಂದರ್ಶಕರು;

(ii) ಸಹ–ಸಂದರ್ಶಕರು;

(iii) ಕುಲಾಧಿಪತಿಗಳು;

(iv) ಕುಲಪತಿಗಳು;

(v) ಸಹಕುಲಪತಿಗಳು;

(vi) ಕುಲಸಚಿವರು;

(vii) ಹಣಕಾಸು ಅಧಿಕಾರಿ;

(viii) ಡೀನ್;

(ix) ಕುಲಸಚಿವರು ಮೌಲ್ಯಮಾಪನ; ಮತ್ತು

(x) ಪರಿನಿಯಮಗಳ ಮೂಲಕ ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಘೋಷಿಸಬಹುದಾದ ಅಂಥ ಇತರ ಅಧಿಕಾರಿಗಳು.

13. **ಸಂದರ್ಶಕರು.–** (1) ಕರ್ನಾಟಕದ ಘನತೆವೆತ್ತ ರಾಜ್ಯಪಾಲರು ವಿಶ್ವವಿದ್ಯಾಲಯದ ಸಂದರ್ಶಕರಾಗಿರತಕ್ಕದ್ದು ಮತ್ತು ಸಂದರ್ಶಕರು ವಿಶ್ವವಿದ್ಯಾಲಯದ ಕಾರ್ಯನಿರ್ವಹಣೆಯ ಸುಧಾರಣೆಗಾಗಿ ಸಲಹೆಗಳನ್ನು ನೀಡಬಹುದು.

(2) ಸಂದರ್ಶಕರು, ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಸಂದರ್ಶಕರು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ವ್ಯವಹಾರಗಳಿಗೆ ಸಂಬಂಧಿಸಿದಂತೆ, ಯಾವುದೇ ಪತ್ರ ಅಥವಾ ಮಾಹಿತಿಯನ್ನು ತರಿಸಿಕೊಳ್ಳುವುದು;

(ii) ಸಂದರ್ಶಕರು, ಅವರು ಸ್ವೀಕರಿಸಿದ ಮಾಹಿತಿಯ ಆಧಾರದ ಮೇಲೆ ವಿಶ್ವವಿದ್ಯಾಲಯಗಳ ಯಾವುದೇ ಪ್ರಾಧಿಕಾರವು ಮಾಡಿದ ಯಾವುದೇ ಆದೇಶ, ನಡೆಸಿದ ವ್ಯವಹರಣೆಗಳು ಅಥವಾ ಕೈಗೊಂಡ ತೀರ್ಮಾನಗಳು, ಈ ಅಧಿನಿಯಮಕ್ಕೆ, ವಿನಿಯಮಗಳಿಗೆ ಅಥವಾ ನಿಯಮಗಳಿಗೆ ಪೂರಕವಾಗಿಲ್ಲವೆಂದು ಮನಗಂಡರೆ ಅವರು ವಿಶ್ವವಿದ್ಯಾಲಯದ ಹಿತಾಸಕ್ತಿಯಿಂದ ತಾವು ಸೂಕ್ತವೆಂದು ಭಾವಿಸಬಹುದಾದ ಅಂಥ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಹಾಗೆ ಹೊರಡಿಸಿದ ನಿರ್ದೇಶನಗಳನ್ನು ಸಂಬಂಧಪಟ್ಟವರೆಲ್ಲರೂ ಪಾಲಿಸತಕ್ಕದ್ದು.

14. **ಸಹ–ಸಂದರ್ಶಕರು.–** (1) ಕರ್ನಾಟಕ ಸರ್ಕಾರದ ಮಾನ್ಯ ಉನ್ನತ ಶಿಕ್ಷಣ ಸಚಿವರು ವಿಶ್ವವಿದ್ಯಾಲಯದ ಸಹ–ಸಂದರ್ಶಕರಾಗಿರತಕ್ಕದ್ದು.

(2) ಸಂದರ್ಶಕರ ಅನುಪಸ್ಥಿತಿಯಲ್ಲಿ ಸಹ–ಸಂದರ್ಶಕರು ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**15. ಕುಲಾಧಿಪತಿಗಳು.–** (1) ಕುಲಾಧಿಪತಿಯವರನ್ನು ಪ್ರಾಯೋಜಕ ಸಂಸ್ಥೆಯು ನೇಮಿಸತಕ್ಕದ್ದು.

(2) ಪ್ರಾಯೋಜಕ ಸಂಸ್ಥೆಯ ಸಂಸ್ಥಾಪಿತ ನ್ಯಾಸಧಾರಿಯು ಮೊದಲನೇ ಕುಲಾಧಿಪತಿಗಳಾಗಿರತಕ್ಕದ್ದು, ಅವರು ತಮ್ಮ ಜೀವನಪರ್ಯಂತ ಅಥವಾ ಅವರು ತಮ್ಮ ಪದವನ್ನು ಬಿಟ್ಟುಕೊಡುವವರೆಗೆ ಕುಲಾಧಿಪತಿಗಳಾಗಿ ಪದಧಾರಣ ಮಾಡಿರತಕ್ಕದ್ದು.

(3) ತದನಂತರದ ಕುಲಾಧಿಪತಿಗಳು, ಅಂಥ ನೇಮಕಾತಿಯನ್ನು ಪರಿಗಣಿಸುವ ಸಂದರ್ಭದಲ್ಲಿ ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ, ಪ್ರಾಯೋಜಕ ಸಂಸ್ಥೆಯ ನ್ಯಾಸಧಾರಿಯಾಗಿರತಕ್ಕದ್ದು ಅಥವಾ ಶಿಕ್ಷಣ, ವಿಜ್ಞಾನ, ಸಂಸ್ಕೃತಿ ಅಥವಾ ಸಾರ್ವಜನಿಕ ಜೀವನ ಕ್ಷೇತ್ರಗಳಲ್ಲಿ ರಾಷ್ಟ್ರೀಯ ಮಟ್ಟದ ಛಾಪನ್ನು ಪಡೆದಿರುವ ಅಂಥ ಇತರ ವ್ಯಕ್ತಿಯಾಗಿರತಕ್ಕದ್ದು.

(4) ಹಾಗೆ ನೇಮಕಗೊಂಡ ತದನಂತರದ ಕುಲಾಧಿಪತಿಗಳು ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ಪದಧಾರಣ ಮಾಡತಕ್ಕದ್ದು.

(5) ಕುಲಾಧಿಪತಿಗಳು ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳ ಅಡಿಯಲ್ಲಿ ಅವರಿಗೆ ಪ್ರದಾನ ಮಾಡಬಹುದಾದ ಅಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು, ಅವುಗಳಲ್ಲಿ ಈ ಮುಂದಿನ ಅಧಿಕಾರಗಳು ಒಳಗೊಂಡಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುವುದು;

(ii) ಸಂದರ್ಶಕರ ಮತ್ತು ಸಹ–ಸಂದರ್ಶಕರಿಬ್ಬರ ಗೈರುಹಾಜರಿಯಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಘಟಿಕೋತ್ಸವಗಳಲ್ಲಿ ಅಧ್ಯಕ್ಷತೆಯನ್ನು ವಹಿಸುವುದು;

(iii) ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವುದು;

(iv) ಈ ಅಧಿನಿಯಮ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಅನುಸಾರವಾಗಿ ಕುಲಪತಿಗಳನ್ನು ನೇಮಿಸುವುದು ಅಥವಾ ಪುನರ್ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(v) ಈ ಅಧಿನಿಯಮದ 16ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ನಾಮನಿರ್ದೇಶಕ ಸಮಿತಿಯ ಸದಸ್ಯರಾಗಿ ಒಬ್ಬ ವ್ಯಕ್ತಿಯನ್ನು ನಾಮನಿರ್ದೇಶನ ಮಾಡುವುದು;

(vi) ಸಹಕುಲಪತಿಗಳು, ಡೀನ್, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿಗಳ ನೇಮಕಾತಿಯನ್ನು ಪೂರ್ವಾನುಮೋದಿಸುವುದು;

(vii) ಪ್ರಬಂಧಕ ಮಂಡಳಿಯ ಸದಸ್ಯರನ್ನಾಗಿ ಇಬ್ಬರು ಶಿಕ್ಷಣ ತಜ್ಞರನ್ನು ನಾಮನಿರ್ದೇಶಿಸುವುದು;

(viii) ಮೊದಲ ಸಹಕುಲಪತಿಗಳು ಮತ್ತು ಹಣಕಾಸು ಅಧಿಕಾರಿಗಳನ್ನು ನೇಮಿಸುವುದು;

(ix) ಮೊದಲ ವ್ಯವಸ್ಥಾಪನಾ ಮಂಡಳಿ, ಹಣಕಾಸು ಸಮಿತಿ, ಸಂಶೋಧನಾ ಪರಿಷತ್ತು ಹಾಗೂ ಶೈಕ್ಷಣಿಕ ಪರಿಷತ್ತುಗಳನ್ನು ರಚಿಸುವುದು;

(x) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ ಕಾರ್ಯಸೂಚಿ ವಿಷಯಗಳನ್ನು ಪೂರ್ವಾನುಮೋದಿಸುವುದು;

(xi) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ (ಪ್ರಬಂಧಕ ಮಂಡಳಿಯ ಸಭೆಯಲ್ಲಿ ಉಂಟಾದ ವಿವಾದಗಳನ್ನು ಹೊರತುಪಡಿಸಿ) ವಿವಾದಗಳನ್ನು ಪರಿಹರಿಸುವುದು.

(6) ಪದಾಧಿಕಾರಿ ಅಥವಾ ಸಂಸ್ಥೆ ಮತ್ತು ವಿಶ್ವವಿದ್ಯಾಲಯದ ಯಾವುದೇ ಇತರ ಪದಾಧಿಕಾರಿ ಅಥವಾ ಸಂಸ್ಥೆಗಳ ನಡುವೆ ವಿವಾದಗಳು ಉಂಟಾದಲ್ಲಿ, ಆ ವಿವಾದವನ್ನು ಕುಲಾಧಿಪತಿಯವರ ಪರ್ಯಾಲೋಚನೆಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿವಾದದ ಸಂದರ್ಭದಲ್ಲಿ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**16. ಕುಲಪತಿಗಳು.–** (1) (2)ನೇ ಉಪಪ್ರಕರಣದ ಉಪಬಂಧಗಳಿಗೆ ಅನುಸಾರವಾಗಿ ನಾಮನಿರ್ದೇಶಕ ಸಮಿತಿಯು ಶಿಫಾರಸ್ಸು ಮಾಡಿದ ಮೂರು ವ್ಯಕ್ತಿಗಳ ಪೈಕಿಯಿಂದ ಒಬ್ಬರನ್ನು ಮೂರು ವರ್ಷಗಳ ಅವಧಿಗಾಗಿ ಕುಲಪತಿಗಳನ್ನಾಗಿ, ಪರಿನಿಯಮಗಳಲ್ಲಿ ನಿಯಮಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರು

ನೇಮಿಸತಕ್ಕದ್ದು. ಮೂರು ವರ್ಷಗಳ ಅವಧಿಯು ಮುಗಿದ ತರುವಾಯ, ಇದನ್ನು ಮೂರು ವರ್ಷಗಳ ಮತ್ತೊಂದು ಅವಧಿಗೆ ನವೀಕರಿಸಬಹುದು:

ಪರಂತು, ಕುಲಪತಿಯವರು, ತಮ್ಮ ಅವಧಿ ಮುಗಿದ ನಂತರವೂ ಹೊಸ ಕುಲಪತಿಯವರು ಸೇರಿಕೊಳ್ಳುವವರೆಗೆ ಪದದಲ್ಲಿ ಮುಂದುವರೆಯತಕ್ಕದ್ದು. ಆದಾಗ್ಯೂ ಈ ಅವಧಿಯು ಯಾವುದೇ ಸಂದರ್ಭದಲ್ಲಿ ಒಂದು ವರ್ಷವನ್ನು ಮೀರತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಹೇಳಿರುವ ನಾಮನಿರ್ದೇಶಕ ಸಮಿತಿಯಲ್ಲಿ ಈ ಮುಂದಿನ ವ್ಯಕ್ತಿಗಳು ಇರತಕ್ಕದ್ದು, ಎಂದರೆ:-

(i) ಕುಲಾಧಿಪತಿಯವರು ನಾಮನಿರ್ದೇಶಿಸಿದ ಒಬ್ಬ ವ್ಯಕ್ತಿ;

(ii) ಪ್ರಬಂಧಕ ಮಂಡಳಿಯ ಇಬ್ಬರು ನಾಮ ನಿರ್ದೇಶಿತರು, ಇವರಲ್ಲಿ ಒಬ್ಬರನ್ನು ಪ್ರಬಂಧಕ ಮಂಡಳಿಯು ಸಮಿತಿಯ ಸಂಚಾಲಕರೆಂದು ನಾಮನಿರ್ದೇಶಿಸತಕ್ಕದ್ದು.

(3) ನಾಮನಿರ್ದೇಶಕ ಸಮಿತಿಯು, ಅರ್ಹತೆಯ ಆಧಾರದ ಮೇಲೆ ಕುಲಪತಿಯ ಹುದ್ದೆಗೆ ಸೂಕ್ತವಾದ ಮೂರು ವ್ಯಕ್ತಿಗಳ ಹೆಸರನ್ನು ಶಿಫಾರಸ್ಸು ಮಾಡತಕ್ಕದ್ದು ಮತ್ತು ಅದನ್ನು ಪ್ರತಿಯೊಬ್ಬ ವ್ಯಕ್ತಿಯ ವಿದ್ಯಾರ್ಹತೆ ಮತ್ತಿತರ ವಿಶಿಷ್ಟ ಪ್ರಶಸ್ತಿಗಳನ್ನು ತಿಳಿಸುವ ಒಂದು ಸಂಕ್ಷಿಪ್ತ ವರದಿಯೊಂದಿಗೆ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು.

(4) ಕುಲಪತಿಯವರು ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಹಣಾ ಮತ್ತು ಶೈಕ್ಷಣಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣವನ್ನು ಚಲಾಯಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯದ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೊಳಿಸತಕ್ಕದ್ದು:

ಪರಂತು, ಶಿಕ್ಷಕರ ನೇಮಕಾತಿಯನ್ನು ಹೊರತುಪಡಿಸಿ ಕೂಡಲೇ ಕ್ರಮವನ್ನು ಕೈಗೊಳ್ಳಬೇಕಾದ ತುರ್ತು ಸ್ವರೂಪದ ಯಾವುದೇ ಇತರ ವಿಷಯಗಳಲ್ಲಿ ಮತ್ತು ಅದನ್ನು ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ವಿಶ್ವವಿದ್ಯಾಲಯವು ಇದಕ್ಕಾಗಿ ಅಧಿಕೃತಗೊಳಿಸಿದ್ದ ಯಾವೊಬ್ಬ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ಇತರೆ ಸಂಸ್ಥೆಯು ಕೂಡಲೇ ಕ್ರಮಕೈಗೊಳ್ಳುವುದು ಸಾಧ್ಯವಿರದಿರುವಾಗ ಕುಲಪತಿಯವರು ತಾನು ಸೂಕ್ತವೆಂದು ಭಾವಿಸಬಹುದಾದಂತಹ ಕ್ರಮವನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆದು ಕೈಗೊಳ್ಳತಕ್ಕದ್ದು.

(5) ಕುಲಪತಿಯವರು ಪರಿನಿಯಮಗಳು ಅಥವಾ ನಿಯಮಗಳಲ್ಲಿ ಹೇಳಲಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು:

ಪರಂತು, ಕುಲಪತಿಗಳ ಅಭಿಪ್ರಾಯದಲ್ಲಿ, ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಯಾವುದೇ ನಿರ್ಣಯವು, ಈ ಅಧಿನಿಯಮ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳು, ವಿನಿಯಮಗಳು ಅಥವಾ ನಿಯಮಗಳ ಮೂಲಕ ಪ್ರದತ್ತವಾದ ಅಧಿಕಾರದ ಹೊರಗಿದ್ದರೆ ಅಥವಾ ವಿಶ್ವವಿದ್ಯಾಲಯದ ಹಿತಾಸಕ್ತಿಗೆ ಪ್ರತಿಕೂಲವಾಗಬಹುದಾಗಿದ್ದರೆ, ಅದರ ನಿರ್ಣಯದ ದಿನಾಂಕದಿಂದ ಹದಿನೈದು ದಿನಗಳ ಒಳಗೆ ತನ್ನ ನಿರ್ಣಯವನ್ನು ಪರಿಷ್ಕರಿಸಲು ಸಂಬಂಧಪಟ್ಟ ಪ್ರಾಧಿಕಾರವನ್ನು ಆತನು ಕೋರತಕ್ಕದ್ದು ಮತ್ತು ಪ್ರಾಧಿಕಾರವು ಅಂಥ ನಿರ್ಣಯವನ್ನು ಸಂಪೂರ್ಣವಾಗಿ ಅಥವಾ ಭಾಗಶ:ವಾಗಿ ಪರಿಷ್ಕರಿಸಲು ನಿರಾಕರಿಸಿದ ಸಂದರ್ಭದಲ್ಲಿ ಅಥವಾ ಹದಿನೈದು ದಿನಗಳೊಳಗೆ ಯಾವುದೇ ನಿರ್ಣಯವನ್ನು ತೆಗೆದುಕೊಳ್ಳಲು ವಿಫಲವಾದಲ್ಲಿ, ನಂತರ ಅಂಥ ವಿಷಯವನ್ನು ಕುಲಾಧಿಪತಿಗಳಿಗೆ ಕಳುಹಿಸತಕ್ಕದ್ದು ಮತ್ತು ಈ ಬಗ್ಗೆ ಇವರ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

(6) ಕುಲಪತಿಯವರ ಸೇವೆಗಳನ್ನು, ಪ್ರಬಂಧಕ ಮಂಡಳಿಯ ಅನುಮೋದನೆಯೊಂದಿಗೆ ಮತ್ತು ಸಹಜ ನ್ಯಾಯದ ತತ್ವಗಳನ್ನು ಅನುಸರಿಸಿದ ನಂತರ ಹಾಗೂ ಶಿಸ್ತಿನ ಆಧಾರದ ಮೇಲೆ ಅಂತ್ಯಗೊಳಿಸುವ ಸಂದರ್ಭವೂ ಸೇರಿದಂತೆ, ಪ್ರಕರಣದ ಬಗ್ಗೆ ಕುಲಪತಿಯು ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡಿದ ತರುವಾಯ, ಕುಲಾಧಿಪತಿಯವರು ಅಂತ್ಯಗೊಳಿಸಬಹುದು.

(7) ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಸಂದರ್ಶಕರು, ಸಹ-ಸಂದರ್ಶಕರು ಮತ್ತು ಕುಲಾಧಿಪತಿಯವರು ಇವರುಗಳ ಗೈರು ಹಾಜರಿಯ ಸಂದರ್ಭದಲ್ಲಿ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**17. ಸಹಕುಲಪತಿಗಳು.**- ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಮೂರು ಜನರನ್ನು ಮೀರದಂತೆ ಸಹಕುಲಪತಿಗಳನ್ನು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**18. ವ್ಯಾಸಂಗ ವಿಭಾಗಗಳ ಡೀನ್‌ಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಪರಿನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವ್ಯಾಸಂಗ ವಿಭಾಗಗಳ ಡೀನ್‌ಗಳನ್ನು ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**19. ಕುಲಸಚಿವರು.–** (1) ಕುಲಾಧಿಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರ ಲಿಖಿತ ಅನುಮೋದನೆಯೊಂದಿಗೆ, ಕುಲಸಚಿವರನ್ನು ನೇಮಕ ಮಾಡತಕ್ಕದ್ದು.

(2) ಪರಿನಿಯಮಗಳಲ್ಲಿ ಪರಿಭಾಷಿಸಿರುವಂಥ ಎಲ್ಲಾ ಕರಾರುಗಳನ್ನು ವಿಶ್ವವಿದ್ಯಾಲಯದ ಪರವಾಗಿ ಕುಲಸಚಿವರು ಮಾಡಿಕೊಳ್ಳತಕ್ಕದ್ದು ಮತ್ತು ಅದಕ್ಕೆ ಸಹಿ ಹಾಕತಕ್ಕದ್ದು.

(3) ಕುಲಸಚಿವರು ವಿಶ್ವವಿದ್ಯಾಲಯದ ಪರವಾಗಿ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಪರಿನಿಯಮಗಳಿಂದ ಪ್ರದತ್ತಗೊಳಿಸಬಹುದಾದಂಥ ಅಥವಾ ಕುಲಾಧಿಪತಿಯವರು ಮತ್ತು ಕುಲಪತಿಯವರು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು ವಿಶ್ವವಿದ್ಯಾಲಯದ ದಾಖಲೆಗಳು ಮತ್ತು ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು, ಕುಲಪತಿಯವರು ಅಥವಾ ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಅಂಥ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿರತಕ್ಕದ್ದು.

**20. ಹಣಕಾಸು ಅಧಿಕಾರಿ.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು, ಪರಿನಿಯಮಗಳ ಮೂಲಕ ಪ್ರದತ್ತಗೊಳಿಸಬಹುದಾದ ಅಂಥ ವಿಧಾನದಲ್ಲಿ ಹಣಕಾಸು ಅಧಿಕಾರಿಯನ್ನು ನೇಮಕ ಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**21. ಇತರ ಅಧಿಕಾರಿಗಳು.–** ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ ನೇಮಕಾತಿಯ ವಿಧಾನ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಕರ್ತವ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ – IV

## ವಿಶ್ವವಿದ್ಯಾಲಯದ ಪ್ರಾಧಿಕಾರಗಳು

**22. ವಿಶ್ವವಿದ್ಯಾಲಯದ ಪ್ರಾಧಿಕಾರಗಳು.–** ಈ ಮುಂದಿನವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:–

(i) ಪ್ರಬಂಧಕ ಮಂಡಳಿ;

(ii) ವ್ಯವಸ್ಥಾಪನ ಮಂಡಳಿ;

(iii) ಶೈಕ್ಷಣಿಕ ಪರಿಷತ್ತು;

(iv) ಸಂಶೋಧನಾ ಪರಿಷತ್ತು;

(v) ಹಣಕಾಸು ಸಮಿತಿ; ಮತ್ತು

(vi) ವಿಶ್ವವಿದ್ಯಾಲಯದ ಪ್ರಾಧಿಕಾರಗಳೆಂದು ಪರಿನಿಯಮಗಳ ಮೂಲಕ ಘೋಷಿಸಬಹುದಾದ ಅಂಥ ಇತರ ಪ್ರಾಧಿಕಾರಗಳು.

**23. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು.–** (1) ಪ್ರಬಂಧಕ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು – ಅಧ್ಯಕ್ಷರು;

(ii) ಕುಲಪತಿಯವರು – ಸದಸ್ಯರು;

(iii) ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(iv) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(v) ರಾಜ್ಯ ಸರ್ಕಾರವು ನಾಮ ನಿರ್ದೇಶನ ಮಾಡಿದ ಆಡಳಿತವನ್ನು ಒಳಗೊಂಡಂತೆ ವ್ಯವಸ್ಥಾಪನೆ, ಹಣಕಾಸು ಅಥವಾ ಯಾವುದೇ ಇತರ ವಿಶೇಷ ಕ್ಷೇತ್ರದಲ್ಲಿನ ಒಬ್ಬರು ತಜ್ಞರು;

(vi) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಇಬ್ಬರು ವ್ಯಕ್ತಿಗಳು ಅವರ ಪೈಕಿ ಒಬ್ಬರು ಮಹಿಳೆಯಾಗಿರತಕ್ಕದ್ದು;

(vii) ಸಹ ಕುಲಪತಿಯವರು ಮತದಾನದ ಹಕ್ಕಿಲ್ಲದ ಸದಸ್ಯರಾಗಿರತಕ್ಕದ್ದು;

(viii) ವಿಶ್ವವಿದ್ಯಾಲಯ ಅನುದಾನ ಆಯೋಗದ ನಾಮನಿರ್ದೇಶಿತ ಒಬ್ಬ ಸುಪ್ರಸಿದ್ಧ ಶಿಕ್ಷಣ ತಜ್ಞರು.

(2) ಕುಲಸಚಿವರು ಪ್ರಬಂಧಕ ಮಂಡಳಿಯ ಮತದಾನದ ಹಕ್ಕಿರದ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ಪ್ರಬಂಧಕ ಮಂಡಳಿಯ ಸದಸ್ಯರ ಪದಾವಧಿ, ಸರ್ಕಾರದಿಂದ ನಾಮನಿರ್ದೇಶಿತರಾದ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ನೇಮಕಾತಿ, ನವೀಕರಣ ಮತ್ತು ತೆಗೆದುಹಾಕುವುದು ಮುಂತಾದವುಗಳು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಾಧಿಪತಿಯವರು ಯಾವಾಗಲೂ ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರ ಗೈರುಹಾಜರಿಯಲ್ಲಿ ಕುಲಾಧಿಪತಿಯವರಿಂದ ನಾಮನಿರ್ದೇಶಿತರಾದ ಯಾರಾದರೂ ಒಬ್ಬರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು. ಅಂಥ ಸಭೆಯ ಅಧ್ಯಕ್ಷತೆಯನ್ನು ವಹಿಸುವುದಕ್ಕೆ ಕುಲಾಧಿಪತಿಯವರು ಯಾವೊಬ್ಬ ವ್ಯಕ್ತಿಯನ್ನೂ ನಾಮನಿರ್ದೇಶನ ಮಾಡಿರದಿದ್ದಲ್ಲಿ, ಸಭೆಯಲ್ಲಿ ಹಾಜರಿರುವ ಸದಸ್ಯರು ಸರಳ ಬಹುಮತದ ಮೂಲಕ ಅವರುಗಳ ಪೈಕಿಯಿಂದಲೇ ಆ ಸಭೆಯ ಅಧ್ಯಕ್ಷನನ್ನು ಚುನಾಯಿಸತಕ್ಕದ್ದು.

(5) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಿಗೆ, ಅಂಥ ಸಭೆಯಲ್ಲಿ ಹಾಜರಿದ್ದು ನೀಡುವ ಮೂರು ಜನ ಸದಸ್ಯರು ಗಣಪೂರ್ತಿ (ಕೋರಂ) ಆಗಿರತಕ್ಕದ್ದು:

ಪರಂತು, ಪ್ರಬಂಧಕ ಮಂಡಳಿಯ ಯಾವುದೇ ಸಭೆಯ ಕೋರಂ ಪೂರ್ಣವಾಗಬೇಕಾದರೆ ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಿರುವುದು ಮತ್ತು ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಾಗದೇ ಇದ್ದಾಗ ಕುಲಪತಿಯವರು ಹಾಜರಿರುವುದು ಯಾವಾಗಲೂ ಅವಶ್ಯವಾಗಿರತಕ್ಕದ್ದು.

(6) ಪ್ರಬಂಧಕ ಮಂಡಳಿಯು ವಿಶ್ವವಿದ್ಯಾಲಯದ ಪ್ರಧಾನ ಪ್ರಬಂಧಕ ಸಂಸ್ಥೆಯಾಗಿರತಕ್ಕದ್ದು ಮತ್ತು ಅದು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಕಗೊಳಿಸುವುದು;

(ii) ವಿಶ್ವವಿದ್ಯಾಲಯವು ಅನುಸರಿಸಬೇಕಾದ ಕಾರ್ಯನೀತಿಗಳನ್ನು ರಚಿಸುವುದು;

(iii) ಈ ಅಧಿನಿಯಮದ ಅಥವಾ ಪರಿನಿಯಮಗಳ ಅಥವಾ ನಿಯಮಗಳ ಉಪಬಂಧಗಳಿಗೆ ಅನುಗುಣವಾಗಿ ಇರದ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ತೀರ್ಮಾನಗಳನ್ನು ಪುನರೀಕ್ಷಿಸುವುದು;

(iv) ವಿಶ್ವವಿದ್ಯಾಲಯದ ಆಯವ್ಯಯ ಮತ್ತು ವಾರ್ಷಿಕ ವರದಿಗಳನ್ನು ಅನುಮೋದಿಸುವುದು;

(v) ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸುವುದು ಅಥವಾ ಈಗಾಗಲೇ ಇರುವ ಪರಿನಿಯಮಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವುದು ಅಥವಾ ನಿರಸನಗೊಳಿಸುವುದು;

(vi) ವಿಶ್ವವಿದ್ಯಾಲಯವನ್ನು ಸ್ವಯಂಸಮಾಪನಗೊಳಿಸುವ ನಿರ್ಧಾರವನ್ನು ತೆಗೆದುಕೊಳ್ಳುವುದು;

(vii) ಸರ್ಕಾರಕ್ಕೆ ಸಲ್ಲಿಸುವ ಪ್ರಸ್ತಾವಗಳನ್ನು ಅನುಮೋದಿಸುವುದು;

(viii) ಶುಲ್ಕ ನಿಯಂತ್ರಣ ಸಮಿತಿಗೆ ಮೂವರು ಸದಸ್ಯರನ್ನು ನಾಮನಿರ್ದೇಶನ ಮಾಡುವುದು;

(ix) ವಿಶ್ವವಿದ್ಯಾಲಯದ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕೆ ಅಪೇಕ್ಷಣೀಯವೆಂದು ಕಂಡುಬರುವಂಥ ತೀರ್ಮಾನಗಳನ್ನು ಮತ್ತು ಕ್ರಮಗಳನ್ನು ಕೈಗೊಳ್ಳುವುದು.

(7) ಪ್ರಬಂಧಕ ಮಂಡಳಿಯು ಒಂದು ವರ್ಷದಲ್ಲಿ ಕನಿಷ್ಠ ಮೂರು ಸಲ ಸಭೆ ಸೇರತಕ್ಕದ್ದು.

(8) ಕಾರ್ಯಸೂಚಿ ವಿಷಯದ ಪರವಾಗಿ ಕುಲಾಧಿಪತಿಯವರು ಸಕಾರಾತ್ಮಕ ಮತದಾನವನ್ನು ಅನುಸರಿಸಿದ ಹೊರತಾಗಿ ಯಾವುದೇ ಕಾರ್ಯಸೂಚಿ ವಿಷಯಗಳ ಸಂಬಂಧದಲ್ಲಿ, ತಮ್ಮ ಸಭೆಯಲ್ಲಿ ಪ್ರಬಂಧಕ ಮಂಡಳಿಯು ಯಾವುದೇ ಗೊತ್ತುವಳಿಯನ್ನು ಹೊರಡಿಸತಕ್ಕದ್ದಲ್ಲ ಅಥವಾ ಯಾವುದೇ ನಿರ್ಧಾರವನ್ನು ಕೈಗೊಳ್ಳತಕ್ಕದ್ದಲ್ಲ.

(9) ಪ್ರಬಂಧಕ ಮಂಡಳಿಯ ಸಭೆಯ ಅಭಿಪ್ರಾಯದಲ್ಲಿ ವಿವಾದ ಉಂಟಾದ ಸಂದರ್ಭದಲ್ಲಿ, ವಿಷಯವನ್ನು ಪ್ರಾಯೋಜಕ ಸಂಸ್ಥೆಗೆ ಉಲ್ಲೇಖಿಸತಕ್ಕದ್ದು ಮತ್ತು ಅಂಥ ವಿಷಯದ ಸಂಬಂಧದಲ್ಲಿ ಪ್ರಾಯೋಜಕ ಸಂಸ್ಥೆಯ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ಮೇಲೆ ಬಂಧನಕಾರಿಯಾಗಿರತಕ್ಕದ್ದು.

**24. ವ್ಯವಸ್ಥಾಪನಾ ಮಂಡಳಿ.–** (1) ವ್ಯವಸ್ಥಾಪನಾ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಗಳು;

(ii) ಸಹಕುಲಪತಿಗಳು;

(iii) ಕುಲಸಚಿವರು;

(iv) ಪ್ರಾಯೋಜಕ ಸಂಸ್ಥೆಯ ಇಬ್ಬರು ನಾಮನಿರ್ದೇಶಿತರು;

(v) ಕುಲಾಧಿಪತಿಗಳು ನಾಮನಿರ್ದೇಶಿಸಬಹುದಾದ ವ್ಯಾಸಂಗ ವಿಭಾಗಗಳ ಇಬ್ಬರು ಡೀನ್‌ಗಳು;

(vi) ಕುಲಸಚಿವರು ಮೌಲ್ಯಮಾಪನ.

(2) ಕುಲಪತಿಯು ವ್ಯವಸ್ಥಾಪನಾ ಮಂಡಳಿಯ ಅಧ್ಯಕ್ಷನಾಗಿರತಕ್ಕದ್ದು ಮತ್ತು ರಿಜಿಸ್ಟ್ರಾರನು, ರಿಜಿಸ್ಟ್ರಾರನ ಗೈರು ಹಾಜರಿಯಲ್ಲಿ, ರಿಜಿಸ್ಟ್ರಾರ್ ಮೌಲ್ಯಮಾಪನ ಕುಲಾಧಿಪತಿಯವರ ಪೂರ್ವಾನುಮೋದನೆಯೊಂದಿಗೆ ವ್ಯವಸ್ಥಾಪನಾ ಮಂಡಳಿಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ವ್ಯವಸ್ಥಾಪನಾ ಮಂಡಳಿಯು ವಿಶ್ವವಿದ್ಯಾಲಯದ ಕಾರ್ಯನಿರ್ವಹಣಾ ಸಂಸ್ಥೆಯಾಗಿರತಕ್ಕದ್ದು. ವ್ಯವಸ್ಥಾಪನಾ ಮಂಡಳಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ವ್ಯವಸ್ಥಾಪನಾ ಮಂಡಳಿಯ ಎಲ್ಲಾ ಸಭೆಗಳಲ್ಲಿ ಯಾವಾಗಲೂ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು ಹಾಗೂ ಕುಲಪತಿಯವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೇ ಇದ್ದ ಸಂದರ್ಭದಲ್ಲಿ ಸಭೆಯಲ್ಲಿ ಹಾಜರಿರುವ ಸದಸ್ಯರು ಚುನಾಯಿಸಿದ ಯಾವುದೇ ಇತರ ಸದಸ್ಯರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ವ್ಯವಸ್ಥಾಪನಾ ಮಂಡಳಿಯ ಸಭೆಯಲ್ಲಿ ಯಾವುದೇ ವಿಷಯವನ್ನು ಕುರಿತು ವಿವಾದ ಉಂಟಾದಲ್ಲಿ ಸದರಿ ವಿಷಯವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯದ ಬಗ್ಗೆ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**25. ಶೈಕ್ಷಣಿಕ ಪರಿಷತ್ತು.–**(1) ಶೈಕ್ಷಣಿಕ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಕಾರ್ಯದರ್ಶಿಗಳು

(iv) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(v) ಕುಲಸಚಿವರು ಮೌಲ್ಯಮಾಪನ – ಸದಸ್ಯರು

(vi) ಕುಲಾಧಿಪತಿಯವರ ಒಬ್ಬ ನಾಮನಿರ್ದೇಶಿತರು – ಸದಸ್ಯರು

(2) ಶೈಕ್ಷಣಿಕ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಶೈಕ್ಷಣಿಕ ಸಂಸ್ಥೆಯಾಗಿರತಕ್ಕದ್ದು ಮತ್ತು ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಹಾಗೂ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**26. ಸಂಶೋಧನಾ ಪರಿಷತ್ತು.**– (1) ಸಂಶೋಧನಾ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಸಂಶೋಧನಾ ಸಮಿತಿಯಾಗಿರತಕ್ಕದ್ದು ಹಾಗೂ ಸಂಶೋಧನಾ ಕ್ಷೇತ್ರದ ಆದ್ಯತೆಯೂ ಒಳಗೊಂಡಂತೆ, ವಿಶ್ವವಿದ್ಯಾಲಯವು ಕೈಗೊಳ್ಳಬೇಕಾದ ಸಂಶೋಧನೆಯ ಬಗ್ಗೆ ಒಂದು ವ್ಯಾಪಕವಾದ ಪರಿಪೂರ್ಣ ಭವಿಷ್ಯದ್ ದೃಷ್ಟಿಯನ್ನು ಒದಗಿಸತಕ್ಕದ್ದು. ಈ ಪರಿಷತ್ತು, ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಮತ್ತು ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಸಂಶೋಧನಾ ಮತ್ತು ಅನ್ವೇಷಣಾ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ಸಂಶೋಧನಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಸಂಶೋಧನೆಯ ಡೀನ್ – ಕಾರ್ಯದರ್ಶಿ

(iv) ಅನ್ವೇಷಣಾ ವಿಭಾಗದ ಮುಖ್ಯಸ್ಥರು – ಸದಸ್ಯರು

(V) ಎಲ್ಲಾ ವ್ಯಾಸಂಗ ವಿಭಾಗಗಳ ಡೀನ್‌ಗಳು – ಸದಸ್ಯರು ಮತ್ತು

(vi) ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

**27. ಹಣಕಾಸು ಸಮಿತಿ.**– (1) ಹಣಕಾಸು ಸಮಿತಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು – ಅಧ್ಯಕ್ಷರು

(ii) ಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಸದಸ್ಯರು

(iv) ಹಣಕಾಸು ಅಧಿಕಾರಿ – ಕಾರ್ಯದರ್ಶಿ

(V) ಕುಲಾಧಿಪತಿಯವರ ಒಬ್ಬ ನಾಮನಿರ್ದೇಶಿತರು – ಸದಸ್ಯರು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು; ಮತ್ತು

(vii) ಕುಲಸಚಿವರು ಮೌಲ್ಯಮಾಪನ – ಸದಸ್ಯರು

(2) ಹಣಕಾಸು ಸಮಿತಿಯು ಹಣಕಾಸಿನ ವಿಷಯಗಳನ್ನು ಕೈಗೊಳ್ಳುವ ವಿಶ್ವವಿದ್ಯಾಲಯದ ಪ್ರಧಾನ ಹಣಕಾಸು ಸಂಸ್ಥೆಯಾಗಿರತಕ್ಕದ್ದು ಹಾಗೂ ಅದು ಈ ಅಧಿನಿಯಮ, ನಿಯಮಗಳು ಮತ್ತು ಪರಿನಿಯಮಗಳ ಉಪಬಂಧಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಹಣಕಾಸು ವಿಷಯಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**28. ಇತರ ಪ್ರಾಧಿಕಾರಗಳು.**– ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ರಚನೆ, ಅಧಿಕಾರಗಳು ಹಾಗೂ ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

**29. ಒಂದು ಪ್ರಾಧಿಕಾರದ ಅಥವಾ ಸಂಸ್ಥೆಯ ಸದಸ್ಯತ್ವಕ್ಕೆ ಅನರ್ಹತೆ.**– ವಿಶ್ವವಿದ್ಯಾಲಯದ ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಒಬ್ಬ ವ್ಯಕ್ತಿಯು,–

(ಎ) ಅಸ್ವಸ್ಥ ಚಿತ್ತನಾಗಿದ್ದು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿಸಲ್ಪಟ್ಟಿದ್ದರೆ;

(ಬಿ) ಅವಿಮುಕ್ತ ದಿವಾಳಿಯಾಗಿದ್ದರೆ;

(ಸಿ) ನೈತಿಕ ಅಧಃಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದರೆ;

(ಡಿ) ಖಾಸಗಿ ಬೋಧನಾ ತರಗತಿಗಳನ್ನು ನಡೆಸುತ್ತಿದ್ದರೆ ಅಥವಾ ಸ್ವತಃ ನಿರತನಾಗಿದ್ದರೆ;

(ಇ) ಯಾವುದೇ ವಿಧದಲ್ಲಿ, ಎಲ್ಲಿಯೇಯಾಗಲಿ, ಯಾವುದೇ ಪರೀಕ್ಷೆಯನ್ನು ನಡೆಸುವಲ್ಲಿ ಅನುಚಿತ ಅಭ್ಯಾಸದಲ್ಲಿ ತೊಡಗಿದ್ದಕ್ಕಾಗಿ ಅಥವಾ ಉತ್ತೇಜಿಸಿದ್ದಕ್ಕಾಗಿ ದಂಡಿತನಾಗಿದ್ದರೆ;

(ಎಫ್) ಪ್ರಾಯೋಜಿತ ಸಂಸ್ಥೆಯು ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಯಾವೊಬ್ಬ ಸದಸ್ಯನು ಆ ಪದವನ್ನು ಹೊಂದಿರುವುದಕ್ಕೆ ಅರ್ಹನಲ್ಲನೆಂದು ಲಿಖಿತದಲ್ಲಿ ಅಭಿಪ್ರಾಯ ನೀಡಿದಾಗಲೆಲ್ಲಾ,

– ಸದಸ್ಯನಾಗಿರುವುದಕ್ಕೆ ಅನರ್ಹನಾಗತಕ್ಕದ್ದು.

**30. ಖಾಲಿಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಕಾರ್ಯ ಅಥವಾ ವ್ಯವಹರಣೆಗಳು ಕೇವಲ ಅದರಲ್ಲಿ ಯಾವುದೇ ಖಾಲಿಸ್ಥಾನ ಇದೆ ಎಂಬ ಕಾರಣದಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣದಿಂದ ಮಾತ್ರವೇ ಅಸಿಂಧುವಾಗತಕ್ಕದ್ದಲ್ಲ.

**31. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು.–** (1) ಯಾವುವೇ ಕಾರ್ಯಸೂಚಿ ವಿಷಯಗಳನ್ನು ಕುಲಾಧಿಪತಿಯವರ ಪೂರ್ವಾನುಮೋದನೆಯನ್ನು ಪಡೆಯದೇ ಪ್ರಬಂಧಕ ಮಂಡಳಿಯ ಅಥವಾ ವ್ಯವಸ್ಥಾಪನಾ ಮಂಡಳಿಯ ಅಥವಾ ಯಾವುದೇ ಸಮಿತಿಯ ಸಭೆಗಳ ಕಾರ್ಯಸೂಚಿ ವಿಷಯಗಳಲ್ಲಿ ಸೇರಿಸತಕ್ಕದ್ದಲ್ಲ ಅಥವಾ ಚರ್ಚೆಗೆ ತೆಗೆದುಕೊಳ್ಳತಕ್ಕದ್ದಲ್ಲ ಅಥವಾ ತೀರ್ಮಾನಿಸತಕ್ಕದ್ದಲ್ಲ.

(2) ಈ ಅಧಿನಿಯಮದ ಯಾವುದೇ ಉಪಬಂಧಗಳನ್ನು ಪಾಲಿಸದೆ ಇರುವ ಉಲ್ಲಂಘನೆಯ ಸಂದರ್ಭದಲ್ಲಿ, ಕುಲಾಧಿಪತಿಯವರು ವಿಶ್ವವಿದ್ಯಾಲಯದ ಯಾವುದೇ ಪದಾಧಿಕಾರಿ ಅಥವಾ ಸಂಸ್ಥೆಯು ತೆಗೆದುಕೊಂಡ ಎಲ್ಲಾ ತೀರ್ಮಾನಗಳನ್ನು ವಿಪರ್ಯಯಗೊಳಿಸುವ ಮೂಲಕ ಪರಿಹಾರ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಅಧಿಕಾರವನ್ನು ಎಲ್ಲಾ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಅಂಥ ಪರಿಹಾರ ಕ್ರಮದ ಪರಿಣಾಮವಾಗಿ, ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ವಿಶ್ವವಿದ್ಯಾಲಯದ ಪದಾಧಿಕಾರಿ ಅಥವಾ ಸಂಸ್ಥೆಯು ಕೈಗೊಂಡಿದ್ದ ಎಲ್ಲಾ ಅಂಥ ಕ್ರಮಗಳು, ಮೊದಲಿನಿಂದಲೂ ಶೂನ್ಯ ಮತ್ತು ಅಕೃತ ಎಂದು ಭಾವಿಸತಕ್ಕದ್ದು ಹಾಗೂ ತತ್ಪರಿಣಾಮವಾಗಿ, ಉಪಬಂಧ ಪಾಲಿಸದೇ ಇದ್ದ ವಿಷಯ ಅಥವಾ ನಿರ್ಧಾರದ ಸಂಬಂಧದಲ್ಲಿ ಅದಕ್ಕೆ ಮುಂಚೆ ಇದ್ದ ವಸ್ತುಸ್ಥಿತಿಯೇ ಮುಂದುವರಿಯತಕ್ಕದ್ದು.

## ಅಧ್ಯಾಯ – V

## ಪರಿನಿಯಮಗಳು ಮತ್ತು ವಿನಿಯಮಗಳು

**32. ಪರಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಪರಿನಿಯಮಗಳು, ವಿಶ್ವವಿದ್ಯಾಲಯಕ್ಕೆ ಮತ್ತು ಸಿಬ್ಬಂದಿಗೆ ಸಂಬಂಧಿಸಿದ ಎಲ್ಲಾ ಅಥವಾ ಯಾವುದೇ ವಿಷಯಕ್ಕೆ ಈ ಕೆಳಗಿನಂತೆ ಉಪಬಂಧ ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಕಾರ್ಯಕಲಾಪಗಳನ್ನು ನಡೆಸುವ ಮತ್ತು ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸದಿರುವ ಸಂಸ್ಥೆಗಳ ರಚನೆಯ ಕಾರ್ಯವಿಧಾನ;

(ii) ಶಾಶ್ವತ ಶಾಸನಬದ್ಧ ದತ್ತಿ ನಿಧಿ, ವಿಶ್ವವಿದ್ಯಾಲಯ ದತ್ತಿ ನಿಧಿ, ಸಾಮಾನ್ಯ ನಿಧಿ ಹಾಗೂ ಅಭಿವೃದ್ಧಿ ನಿಧಿಗಳ ನಿರ್ವಹಣೆ;

(iii) ಕುಲಪತಿಗಳು, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರ ನೇಮಕಾತಿಯ ನಿಬಂಧನೆಗಳು ಹಾಗೂ ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಪ್ರಕಾರ್ಯಗಳು;

(iv) ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ, ಅಧ್ಯಾಪಕರ ಮತ್ತು ನೌಕರರ ನೇಮಕಾತಿ ವಿಧಾನ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(v) ವಿಶ್ವವಿದ್ಯಾಲಯ ಹಾಗೂ ಅದರ ಅಧಿಕಾರಿಗಳು, ವ್ಯಾಸಂಗ ವಿಭಾಗದ (ಫ್ಯಾಕಲ್ಟಿ) ಸದಸ್ಯರು, ನೌಕರರು ಹಾಗೂ ವಿದ್ಯಾರ್ಥಿಗಳ ನಡುವೆ ಉಂಟಾದ ವಿವಾದಗಳನ್ನು ಪರಿಹರಿಸುವ ಕಾರ್ಯವಿಧಾನ;

(vi) ವಿಭಾಗಗಳು ಮತ್ತು ವ್ಯಾಸಂಗ ವಿಭಾಗಗಳ (ಫ್ಯಾಕಲ್ಟಿಗಳ) ಸೃಜನೆ, ರದ್ದತಿ ಅಥವಾ ಪುನಾರಚನೆ;

(vii) ಇತರ ವಿಶ್ವವಿದ್ಯಾಲಯಗಳು ಅಥವಾ ಉನ್ನತ ಕಲಿಕಾ ಸಂಸ್ಥೆಗಳ ಜೊತೆಯಲ್ಲಿ ಸಹಕರಿಸಬೇಕಾದ ರೀತಿ;

(viii) ಗೌರವ ಪದವಿಗಳ ನೀಡಿಕೆಯ ಕಾರ್ಯವಿಧಾನ;

(ix) ಉಚಿತ ಶಿಕ್ಷಣ (ಫ್ರಿಶಿಪ್) ಮತ್ತು ವಿದ್ಯಾರ್ಥಿವೇತನ ಮಂಜೂರಾತಿಗೆ ಸಂಬಂಧಿಸಿದ ಉಪಬಂಧಗಳು;

(x) ವಿವಿಧ ವ್ಯಾಸಂಗ ಕ್ರಮಗಳಲ್ಲಿನ ಸೀಟುಗಳ ಸಂಖ್ಯೆಗೆ ಸಂಬಂಧಿಸಿದ ಕಾರ್ಯನೀತಿಗಳು ಮತ್ತು ಅಂಥ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಕಾರ್ಯವಿಧಾನ;

(xi) ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಶುಲ್ಕಕ್ಕೆ ಸಂಬಂಧಿಸಿದ ಕಾರ್ಯನೀತಿ;

(xii) ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಉಚಿತ ಶಿಕ್ಷಣ (ಫ್ರಿಶಿಪ್), ಪದಕಗಳು ಹಾಗೂ ಬಹುಮಾನಗಳನ್ನು ಪ್ರಾರಂಭಿಸುವುದು;

(xiii) ಪ್ರಬಂಧಕ ಮಂಡಳಿಯು ನಿರ್ಧರಿಸಬಹುದಾದ ಅಥವಾ ಈ ಅಧಿನಿಯಮದ ಅಡಿಯಲ್ಲಿ ಪರಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬೇಕಾದ ಅಗತ್ಯತೆಯುಳ್ಳ ಯಾವುದೇ ಇತರ ವಿಷಯಗಳು.

**33. ಪರಿನಿಯಮಗಳ ರಚನೆ ವಿಧಾನ.–** (1) ವ್ಯವಸ್ಥಾಪನಾ ಮಂಡಳಿಯು ರಚಿಸಿದ ಮೊದಲ ಪರಿನಿಯಮಗಳನ್ನು ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ವ್ಯವಸ್ಥಾಪನಾ ಮಂಡಳಿಯು ಸಲ್ಲಿಸಿದ ಮೊದಲ ಪರಿನಿಯಮಗಳನ್ನು ಪ್ರಬಂಧಕ ಮಂಡಳಿಯು ಪರಿಗಣಿಸತಕ್ಕದ್ದು ಹಾಗೂ ತಾನು ಅವಶ್ಯವೆಂದು ಭಾವಿಸಬಹುದಾದ ಅಂಥ ಮಾರ್ಪಾಡುಗಳು, ಯಾವುದಾದರು ಇದ್ದಲ್ಲಿ, ಅವುಗಳೊಡನೆ ತನ್ನ ಅನುಮೋದನೆಯನ್ನು ನೀಡತಕ್ಕದ್ದು.

(3) ವಿಶ್ವವಿದ್ಯಾಲಯವು, ಪ್ರಬಂಧಕ ಮಂಡಳಿಯು ಅನುಮೋದಿಸಿದ ಮೊದಲ ಪರಿನಿಯಮಗಳನ್ನು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ಪ್ರಕಟಿಸತಕ್ಕದ್ದು ಮತ್ತು ತದನಂತರ ಮೊದಲ ಪರಿನಿಯಮಗಳ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**34. ಪರಿನಿಯಮಗಳ ತಿದ್ದುಪಡಿಯ ಅಧಿಕಾರ.–** ಪ್ರಬಂಧಕ ಮಂಡಳಿಯು ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸಬಹುದು ಅಥವಾ ಪರಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ಅವನ್ನು ನಿರಸನಗೊಳಿಸಬಹುದು.

**35. ವಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ವಿನಿಯಮಗಳು ಈ ಮುಂದಿನ ವಿಷಯಗಳಿಗೆ ಉಪಬಂಧಗಳನ್ನು ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ವಿದ್ಯಾರ್ಥಿ ಪಟ್ಟಿಯಲ್ಲಿ ಅವರುಗಳ ದಾಖಲಾತಿ ಹಾಗೂ ಮುಂದುವರಿಕೆ;

(ii) ವಿಶ್ವವಿದ್ಯಾಲಯದ ಎಲ್ಲಾ ಪದವಿಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ನಿಗದಿಪಡಿಸತಕ್ಕ ವ್ಯಾಸಂಗ ಕ್ರಮಗಳು;

(iii) ಪದವಿಗಳ ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರದಾನ;

(iv) ಸಂಶೋಧನಾ ವೇತನಗಳು (ಫೆಲೋಶಿಪ್), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಪದಕಗಳು ಮತ್ತು ಬಹುಮಾನಗಳನ್ನು ನೀಡಲು ಷರತ್ತುಗಳು;

(v) ಪರೀಕ್ಷೆಗಳನ್ನು ನಡೆಸುವುದು ಹಾಗೂ ಪರೀಕ್ಷೆ ನಡೆಸುವ ಸಂಸ್ಥೆಗಳು, ಪರೀಕ್ಷಕರು, ಪರೀಕ್ಷಾ ಮೇಲ್ವಿಚಾರಕರು, ಟ್ಯಾಬುಲೇಟರ್‌ಗಳು ಮತ್ತು ಮಾಡರೇಟರ್‌ಗಳ ನೇಮಕಾತಿಯ ಷರತ್ತುಗಳು ಮತ್ತು ವಿಧಾನ ಹಾಗೂ ಅವರ ಕರ್ತವ್ಯಗಳು;

(vi) ವಿಶ್ವವಿದ್ಯಾಲಯದ ಪರೀಕ್ಷೆಗಳ, ಪದವಿಗಳ ಹಾಗೂ ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರವೇಶಕ್ಕೆ ವಿಧಿಸತಕ್ಕ ಶುಲ್ಕ;

(vii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನಲ್ಲಿ ವಿದ್ಯಾರ್ಥಿಗಳ ನಿವಾಸಕ್ಕಾಗಿ ಷರತ್ತುಗಳು;

(viii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಶಿಸ್ತು ಪಾಲನೆ;

(ix) ಈ ಅಧಿನಿಯಮದ ಅಡಿಯಲ್ಲಿನ ಪರಿನಿಯಮಗಳಲ್ಲಿ ಉಪಬಂಧ ಕಲ್ಪಿಸಬಹುದಾಂಥ ಇತರ ಎಲ್ಲಾ ವಿಷಯಗಳು.

**36. ವಿನಿಯಮಗಳ ರಚನೆ ವಿಧಾನ.**– ವಿನಿಯಮಗಳನ್ನು ಶೈಕ್ಷಣಿಕ ಪರಿಷತ್ತು ರಚಿಸತಕ್ಕದ್ದು ಹಾಗೂ ವ್ಯವಸ್ಥಾಪನಾ ಮಂಡಳಿಯು ಅನುಮೋದಿಸತಕ್ಕದ್ದು.

**37. ವಿನಿಯಮಗಳ ತಿದ್ದುಪಡಿಗೆ ಅಧಿಕಾರ.**– ವ್ಯವಸ್ಥಾಪನಾ ಮಂಡಳಿಯ ಅನುಮೋದನೆಯೊಡನೆ ಶೈಕ್ಷಣಿಕ ಪರಿಷತ್ತು ಹೊಸ ವಿನಿಯಮಗಳನ್ನು ಅಥವಾ ಹೆಚ್ಚುವರಿ ವಿನಿಯಮಗಳನ್ನು ರಚಿಸಬಹುದು ಅಥವಾ ವಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ನಿರಸನಗೊಳಿಸಬಹುದು.

**38. ಶುಲ್ಕ ನಿಯಂತ್ರಣ ಸಮಿತಿ.**–(1) ಸರ್ಕಾರವು ರಚಿಸಿದ ನಿವೃತ್ತ ಸರ್ವೋಚ್ಚ ನ್ಯಾಯಾಲಯದ ಅಥವಾ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು ಮುಖ್ಯಸ್ಥರಾಗಿರುವ ಮತ್ತು ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ, ಉನ್ನತ ಶಿಕ್ಷಣ ಪ್ರಭಾರದಲ್ಲಿರುವ ಸರ್ಕಾರದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು, ವೈದ್ಯಕೀಯ ಶಿಕ್ಷಣದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು, ಒಬ್ಬ ಮಹಿಳೆಯೂ ಸೇರಿದಂತೆ ಪ್ರಬಂಧಕ ಮಂಡಳಿಯು ನಾಮನಿರ್ದೇಶಿಸಿದ ಇಬ್ಬರು ಶಿಕ್ಷಣ ತಜ್ಞರು ಇವರುಗಳನ್ನು ಒಳಗೊಂಡ ಒಂದು ಶುಲ್ಕ ನಿಯಂತ್ರಣ ಸಮಿತಿಯು, 9ನೇ ಪ್ರಕರಣದ ಅಡಿಯಲ್ಲಿ ಕರ್ನಾಟಕದ ವಿದ್ಯಾರ್ಥಿಗಳಿಗಾಗಿ ಮೀಸಲಿರಿಸಿದ ವಿಶ್ವವಿದ್ಯಾಲಯದ ಸ್ಥಾನಗಳ ಶುಲ್ಕವನ್ನು ನಿಯಂತ್ರಿಸತಕ್ಕದ್ದು. ಸಮಿತಿಯಲ್ಲಿ ಈ ಉದ್ದೇಶಕ್ಕಾಗಿ ಒಬ್ಬರು ಖ್ಯಾತ ಚಾರ್ಟರ್ಡ್ ಅಕೌಂಟೆಂಟ್ ರವರನ್ನು ಸಹ ಸದಸ್ಯನನ್ನಾಗಿ ಸೇರಿಸಿಕೊಳ್ಳತಕ್ಕದ್ದು.

(2) ಸಮಿತಿಯು, ವಿಶ್ವವಿದ್ಯಾಲಯದ ಪ್ರವೇಶಗಳ ಮತ್ತು ಶುಲ್ಕದ ಸಂಗ್ರಹಣೆಯ ಅನುಪಾಲನೆಯನ್ನು ನೋಡಿಕೊಳ್ಳತಕ್ಕದ್ದು.

## ಅಧ್ಯಾಯ – VI

## ಸಂಕೀರ್ಣ

**39. ನೌಕರರ ಸೇವಾ ಷರತ್ತುಗಳು.**– (1) ಪರಿನಿಯಮಗಳ ಮತ್ತು ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಥವಾ ನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳು, ಯಾವುದಾದರೂ ಇದ್ದಲ್ಲಿ, ಅವುಗಳಿಗೆ ಒಳಪಟ್ಟು ಪ್ರತಿಯೊಬ್ಬ ನೌಕರನು ಲಿಖಿತ ಕರಾರಿನ ಅಡಿಯಲ್ಲಿ ನೇಮಕಗೊಳ್ಳತಕ್ಕದ್ದು ಮತ್ತು ಅದನ್ನು ವಿಶ್ವವಿದ್ಯಾಲಯದಲ್ಲಿ ಇಟ್ಟುಕೊಳ್ಳತಕ್ಕದ್ದು ಹಾಗೂ ಅದರ ಪ್ರತಿಯನ್ನು ಸಂಬಂಧಪಟ್ಟ ನೌಕರನಿಗೆ ನೀಡತಕ್ಕದ್ದು.

(2) ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಕಾರ್ಯವಿಧಾನಗಳ ಮೂಲಕ ನಿಯಂತ್ರಿಸತಕ್ಕದ್ದು.

(3) ಕರಾರಿನಿಂದಾಗಿ ವಿಶ್ವವಿದ್ಯಾಲಯ ಮತ್ತು ನೌಕರನ ಮಧ್ಯದಲ್ಲಿ ಉದ್ಭವಿಸಬಹುದಾದ ಯಾವುದೇ ವಿವಾದವನ್ನು, ಲಿಖಿತ ಕರಾರಿನಲ್ಲಿ ಉಪಬಂಧಿಸಿದ ವಿಧಾನದಲ್ಲಿ ಹಾಗೂ ಪರಿನಿಯಮಗಳ ಅನುಸಾರವಾಗಿ ಪರಿಹರಿಸತಕ್ಕದ್ದು.

**40. ಮೇಲ್ಮನವಿ ಹಕ್ಕು.**– ವಿಶ್ವವಿದ್ಯಾಲಯವು ತನ್ನ ನೌಕರರ ಅಥವಾ ವಿದ್ಯಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡ ಸಂದರ್ಭದಲ್ಲಿ, ಬಾಧಿತ ನೌಕರ ಅಥವಾ ವಿದ್ಯಾರ್ಥಿಗಳು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಅಂಥ ಪ್ರಾಧಿಕಾರಕ್ಕೆ ಮೇಲ್ಮನವಿಯನ್ನು ಸಲ್ಲಿಸುವ ಹಕ್ಕನ್ನು ಹೊಂದಿರತಕ್ಕದ್ದು.

**41. ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿ .**– ವಿಶ್ವವಿದ್ಯಾಲಯವು, ತನ್ನ ನೌಕರರ ಪ್ರಯೋಜನಕ್ಕಾಗಿ, ಪರಿನಿಯಮಗಳು ಮತ್ತು ಜಾರಿಯಲ್ಲಿರುವ ಕಾನೂನುಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿಯನ್ನು ರಚಿಸತಕ್ಕದ್ದು ಹಾಗೂ ಅಂಥ ವಿಮಾ ಯೋಜನೆಗಳನ್ನು ಒದಗಿಸತಕ್ಕದ್ದು.

**42. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು.**– ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಅಥವಾ ಇತರ ಸಂಸ್ಥೆಯ ಸದಸ್ಯನಾಗಿ ಯಾವೊಬ್ಬ ವ್ಯಕ್ತಿಯು ಸೂಕ್ತವಾಗಿ ಆಯ್ಕೆಯಾಗಿದ್ದಾನೆಯೇ ಅಥವಾ ನೇಮಕಗೊಂಡಿದ್ದಾನೆಯೇ ಅಥವಾ ಅದಕ್ಕೆ ಅರ್ಹನಾಗಿದ್ದಾನೆಯೇ ಎಂಬ ಯಾವುದೇ ಪ್ರಶ್ನೆ ಉದ್ಭವಿಸಿದರೆ, ಆ ವಿಷಯವನ್ನು ತೀರ್ಮಾನಕ್ಕಾಗಿ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**43. ಸಮಿತಿಗಳ ರಚನೆ.**– 22ನೇ ಪ್ರಕರಣದಲ್ಲಿ ನಮೂದಿಸಿದ ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಅಧಿಕಾರವನ್ನು ಹೊಂದಿರುವ ಅಂಥ ಸದಸ್ಯರನ್ನು ಒಳಗೊಂಡ ಅಂಥ ಪ್ರಾಧಿಕಾರದ ಒಂದು ಸಮಿತಿಯನ್ನು ರಚಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**44. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಂಸ್ಥೆಯ ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ಪೈಕಿ ಯಾವುದೇ ಸ್ಥಾನವು ಆಕಸ್ಮಿಕವಾಗಿ ಖಾಲಿಯಾದರೆ, ಯಾರ ಸ್ಥಾನವು ಖಾಲಿಯಾಗಿ ತುಂಬಬೇಕಾಗಿ ಬಂದಿದೆಯೋ ಆ ಸದಸ್ಯನನ್ನು ಯಾವ ರೀತಿಯಲ್ಲಿ ಆರಿಸಲಾಗಿತ್ತೋ ಅದೇ ರೀತಿಯಲ್ಲಿ ಹೊಸ ಸದಸ್ಯನನ್ನು ಆರಿಸಿ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ಖಾಲಿ ಸ್ಥಾನವನ್ನು ಭರ್ತಿ ಮಾಡಿದ ವ್ಯಕ್ತಿಯು ಆತನು ಯಾವ ಸದಸ್ಯನ ಸ್ಥಾನದಲ್ಲಿ ಭರ್ತಿಯಾಗಿರುವನೋ ಆ ಸದಸ್ಯನು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯನಾಗಿ ಉಳಿಯುತ್ತಿದ್ದ ಬಾಕಿ ಅವಧಿಯವರೆಗೆ ಮಾತ್ರ ಸದಸ್ಯನಾಗಿರತಕ್ಕದ್ದು.

**45. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.–** ಈ ಅಧಿನಿಯಮ ಅಥವಾ ಪರಿನಿಯಮಗಳು ಅಥವಾ ನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ವಿಶ್ವವಿದ್ಯಾಲಯದ ಯಾವೊಬ್ಬ ಅಧಿಕಾರಿ ಅಥವಾ ಇತರ ನೌಕರರ ವಿರುದ್ಧ ಯಾವುದೇ ದಾವೆ ಅಥವಾ ಇತರ ಕಾನೂನು ವ್ಯವಹರಣೆಗಳನ್ನು ನಡೆಸಲು ಅವಕಾಶ ಇರತಕ್ಕದ್ದಲ್ಲ.

**46. ತಾತ್ಕಾಲಿಕ ಉಪಬಂಧಗಳು.–** ಈ ಅಧಿನಿಯಮ ಮತ್ತು ಪರಿನಿಯಮಗಳ ಯಾವುದೇ ಇತರ ಉಪಬಂಧಗಳಲ್ಲಿ ಏನೇ ಇದ್ದರೂ,–

(i) ಮೊದಲ ಕುಲಪತಿ ಮತ್ತು ಸಹಕುಲಪತಿ, ಯಾರಾದರೂ ಇದ್ದರೆ, ಅವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(ii) ಮೊದಲ ಕುಲಸಚಿವರನ್ನು, ಮೊದಲ ಕುಲಸಚಿವರು ಮೌಲ್ಯಮಾಪನ ಮತ್ತು ಮೊದಲ ಹಣಕಾಸು ಅಧಿಕಾರಿಯವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು; ಮತ್ತು

(iii) ಮೊದಲ ವ್ಯವಸ್ಥಾಪನ ಮಂಡಳಿ, ಮೊದಲ ಹಣಕಾಸು ಸಮಿತಿ, ಮೊದಲ ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಹಾಗೂ ಮೊದಲ ಶೈಕ್ಷಣಿಕ ಪರಿಷತ್ತನ್ನು ಕುಲಾಧಿಪತಿಯವರು ರಚಿಸತಕ್ಕದ್ದು.

**47. ಶಾಶ್ವತ ಶಾಸನಬದ್ಧ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಕನಿಷ್ಠ ಇಪ್ಪತ್ತೈದು ಕೋಟಿ ರೂಪಾಯಿಗಳನ್ನುಳ್ಳ ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು ಈ ಪೈಕಿ ಕನಿಷ್ಠ ಹದಿನೈದು ಕೋಟಿ ರೂಪಾಯಿಗಳು ನಗದು ರೂಪದಲ್ಲಿ ಮತ್ತು ಇನ್ನುಳಿದದ್ದು ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ಇರತಕ್ಕದ್ದು ಮತ್ತು ಇದನ್ನು ತಾನಾಗಿಯೇ ಹೆಚ್ಚಿಸಬಹುದಾಗಿದ್ದು ಆದರೆ ಅದಕ್ಕಿಂತ ಕಡಿಮೆ ಮಾಡತಕ್ಕದ್ದಲ್ಲ:

ಪರಂತು, ಬೆಂಗಳೂರು ಅಥವಾ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊರಗಿರುವ ವಿಶ್ವವಿದ್ಯಾಲಯದ ಸಂದರ್ಭದಲ್ಲಿ ಕನಿಷ್ಠ ಹತ್ತು ಕೋಟಿ ರೂಪಾಯಿಗಳು ನಗದು ರೂಪದಲ್ಲಿರತಕ್ಕದ್ದು ಮತ್ತು ಉಳಿದ ಐದು ಕೋಟಿ ರೂಪಾಯಿಗಳು ಬ್ಯಾಂಕ್ ಗ್ಯಾರಂಟಿಯ ರೂಪದಲ್ಲಿರತಕ್ಕದ್ದು.

(2) ವಿಶ್ವವಿದ್ಯಾಲಯವು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಹಣವನ್ನು ಹೂಡಲು ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯವು ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಗೆ ವರ್ಗಾವಣೆ ಮಾಡಬಹುದು. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನೂ ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(4) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಿದ ವರಮಾನದ ಶೇಕಡಾ ಎಪ್ಪತ್ತೈದರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು, ಉಳಿದ ಶೇಕಡಾ ಇಪ್ಪತ್ತೈದರಷ್ಟನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**48. ವಿಶ್ವವಿದ್ಯಾಲಯದ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ದೇಣಿಗೆಗಳು ಮತ್ತು ಕಾಲಕಾಲಕ್ಕೆ ಸ್ವೀಕರಿಸಲಾದ ಇತರ ನಿಧಿಯನ್ನು ಒಳಗೊಂಡ ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದ ಅಂಥ ನಿಧಿಯನ್ನು ಹೊಂದಿರುವ ಒಂದು ವಿಶ್ವವಿದ್ಯಾಲಯ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು.

(2) ವಿಶ್ವವಿದ್ಯಾಲಯವು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ವಿಶ್ವವಿದ್ಯಾಲಯದ ದತ್ತಿನಿಧಿಯನ್ನು ಹೂಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯ ದತ್ತಿ ನಿಧಿಯು, ವಿಶ್ವವಿದ್ಯಾಲಯವು ತನ್ನ ಸಾಮಾಜಿಕ ಧ್ಯೇಯೋದ್ದೇಶಗಳನ್ನು ನೆರವೇರಿಸುವ ಸಂದರ್ಭದಲ್ಲಿ ಮತ್ತು / ಅಥವಾ ಮುಂಗಾಣದ ಸನ್ನಿವೇಶದಲ್ಲಿ ಉದ್ಭವಿಸಬಹುದಾದ ಹಣಕಾಸು ಸವಾಲುಗಳಿಂದ ತನ್ನನ್ನು

ರಕ್ಷಿಸಿಕೊಳ್ಳುವುದಕ್ಕಾಗಿ, ಸ್ವಇಚ್ಛೆಯಿಂದ ನಿರ್ವಹಿಸಿಕೊಂಡು ಬರಲು ಮತ್ತು ಜವಾಬ್ದಾರಿಯಿಂದ ಹಣ ಹೂಡಿಕೆ ಮಾಡಲು ಇಚ್ಛೆಯುಳ್ಳವರಾಗಿ ಸ್ವಯಂ ವಿಧಿಸಿಕೊಂಡ ನಿಧಿಯಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಗೆ ವರ್ಗಾಯಿಸಬಹುದು. ವಿಶ್ವವಿದ್ಯಾಲಯದ ಸಮಾಪನಗೊಳಿಸುವದನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನು ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(5) ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಬರುವ ವರಮಾನದ ಶೇಕಡಾ ಎಂಭತ್ತರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸದ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತರಷ್ಟನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**49. ಸಾಮಾನ್ಯ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಸಾಮಾನ್ಯ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯವು ವಿಧಿಸಬಹುದಾದ ಎಲ್ಲಾ ಶುಲ್ಕಗಳು;

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೆ ಇರುವ ಯಾವುದೇ ಇತರ ಮೂಲದಿಂದ ಸ್ವೀಕರಿಸಲಾದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ದೇಣಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು / ವಂತಿಗೆಗಳು;

(2) ಸಾಮಾನ್ಯ ನಿಧಿಗೆ ಜಮಾ ಮಾಡುವ ನಿಧಿಗಳನ್ನು ವಿಶ್ವವಿದ್ಯಾಲಯದ ಎಲ್ಲಾ ಆವರ್ತಕ ವೆಚ್ಚಗಳನ್ನು ಭರಿಸಲು ಉಪಯೋಗಿಸಕೊಳ್ಳತಕ್ಕದ್ದು.

**50. ಅಭಿವೃದ್ಧಿ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಅಭಿವೃದ್ಧಿ ನಿಧಿಯನ್ನು ಸಹ ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಅಭಿವೃದ್ಧಿ ಶುಲ್ಕಗಳು;

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ವಿಶ್ವವಿದ್ಯಾಲಯದ ಅಭಿವೃದ್ಧಿಯ ಉದ್ದೇಶಗಳಿಗಾಗಿ ಯಾವುದೇ ಇತರ ಮೂಲಗಳಿಂದ ಸ್ವೀಕರಿಸಿದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ವಂತಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು / ವಂತಿಗೆಗಳು; ಮತ್ತು

(v) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಲಾದ ಎಲ್ಲಾ ವರಮಾನಗಳು.

(2) ಅಭಿವೃದ್ಧಿ ನಿಧಿಗೆ ಕಾಲಕಾಲಕ್ಕೆ ಜಮಾ ಮಾಡಿದ ನಿಧಿಯನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಉಪಯೋಗಿಸಕೊಳ್ಳತಕ್ಕದ್ದು.

**51. ನಿಧಿಗಳ ನಿರ್ವಹಣೆ.–** 47, 48, 49 ಮತ್ತು 50ನೇ ಪ್ರಕರಣಗಳಡಿಯಲ್ಲಿ ಸ್ಥಾಪಿಸಲಾದ ನಿಧಿಗಳನ್ನು ಪ್ರಬಂಧಕ ಮಂಡಳಿಯ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ನಿಯಂತ್ರಿಸತಕ್ಕದ್ದು ಹಾಗೂ ನಿರ್ವಹಿಸತಕ್ಕದ್ದು.

**52. ವಾರ್ಷಿಕ ವರದಿ.–** (1) ವಿಶ್ವವಿದ್ಯಾಲಯದ ವಾರ್ಷಿಕ ವರದಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ಅದರ ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಪ್ರಬಂಧಕ ಮಂಡಳಿಯು ವಾರ್ಷಿಕ ವರದಿಯನ್ನು ತನ್ನ ಸಭೆಯಲ್ಲಿ ಪರಿಗಣಿಸತಕ್ಕದ್ದು ಹಾಗೂ ಅದನ್ನು ಮಾರ್ಪಾಡುಗಳೊಡನೆ ಅಥವಾ ಮಾರ್ಪಾಡುಗಳಿಲ್ಲದೆ ಅನುಮೋದಿಸಬಹುದು.

(3) ಪ್ರಬಂಧಕ ಮಂಡಳಿಯು ಸೂಕ್ತವಾಗಿ ಅನುಮೋದಿಸಿದ ವಾರ್ಷಿಕ ವರದಿಯ ಒಂದು ಪ್ರತಿಯನ್ನು ಪ್ರತಿವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ಡಿಸೆಂಬರ್ 31ಕ್ಕೆ ಮೊದಲು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**53. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.–** (1) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕ ಪತ್ರ ಮತ್ತು ಜಮಾ ಖರ್ಚು ಪಟ್ಟಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯಕ್ಕೆ ಎಲ್ಲಾ ಮೂಲಗಳಿಂದ ಪ್ರಾಪ್ತವಾಗುವ ಅಥವಾ ಸ್ವೀಕರಿಸಲಾಗುವ ಎಲ್ಲಾ ನಿಧಿಗಳು ಹಾಗೂ ವಿತರಿಸಿದ ಅಥವಾ ಸಂದಾಯ ಮಾಡಿದ ಎಲ್ಲಾ ಮೊಬಲಗುಗಳನ್ನು ವಿಶ್ವವಿದ್ಯಾಲಯವು ನಿರ್ವಹಿಸುವ ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕಪತ್ರಗಳನ್ನು ಪ್ರತಿ ವರ್ಷವೂ ಭಾರತದ ಚಾರ್ಟೆಡ್ ಅಕೌಂಟೆಂಟ್‌ಗಳ ಸಂಸ್ಥೆಯ ಸದಸ್ಯರಾಗಿರುವ ಒಬ್ಬ ಲೆಕ್ಕಪರಿಶೋಧಕರಿಂದ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಲೆಕ್ಕಪರಿಶೋಧನಾ ವರದಿಯೊಡನೆ, ಪ್ರತಿ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ನವೆಂಬರ್ 30ಕ್ಕೆ ಮೊದಲು ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(4) ವಾರ್ಷಿಕ ಲೆಕ್ಕಪತ್ರಗಳು, ಜಮಾಖರ್ಚು ಪಟ್ಟಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಪ್ರಬಂಧಕ ಮಂಡಳಿಯು ತನ್ನ ಸಭೆಯಲ್ಲಿ ಪರ್ಯಾಲೋಚಿಸತಕ್ಕದ್ದು ಮತ್ತು ಪ್ರಬಂಧಕ ಮಂಡಳಿಯು ಅದನ್ನು ತನ್ನ ಅಭಿಪ್ರಾಯಗಳೊಡನೆ ಸಂದರ್ಶಕರಿಗೆ ಹಾಗೂ ಸರ್ಕಾರಕ್ಕೆ ಪ್ರತಿ ವರ್ಷದ ಡಿಸೆಂಬರ್ 31 ರಂದು ಅಥವಾ ಅದಕ್ಕೆ ಮೊದಲು ಕಳುಹಿಸತಕ್ಕದ್ದು.

(5) ಲೆಕ್ಕಪರಿಶೋಧಕರ ವರದಿಯಲ್ಲಿ ಯಾವುದೇ ಮುಖ್ಯ ಬದಲಾವಣೆ ಇದ್ದ ಸಂದರ್ಭದಲ್ಲಿ, ರಾಜ್ಯ ಸರ್ಕಾರವು ವಿಶ್ವವಿದ್ಯಾಲಯಕ್ಕೆ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಅಂಥ ನಿರ್ದೇಶನಗಳು ವಿಶ್ವವಿದ್ಯಾಲಯದ ಮೇಲೆ ಬಂಧನಕಾರಿಯಾಗಿರತಕ್ಕದ್ದು.

**54. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಮಿತಿಯ ಯಾವುದೇ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ ಅಥವಾ ಗೊತ್ತುವಳಿಯು ಅಥವಾ ವಿಶ್ವವಿದ್ಯಾಲಯದ ಸ್ವಾಧೀನದಲ್ಲಿರುವ ಇತರ ದಾಖಲೆಗಳು ಅಥವಾ ವಿಶ್ವವಿದ್ಯಾಲಯವು ಯುಕ್ತವಾಗಿ ನಿರ್ವಹಿಸುವ ಯಾವುದೇ ರಿಜಿಸ್ಟರ್‌ನಲ್ಲಿಯ ಯಾವುದೇ ನಮೂದುಗಳ ಪ್ರತಿಯನ್ನು, ಅದರ ಮೇಲೆ ಕುಲಸಚಿವರು ಪ್ರಮಾಣೀಕರಿಸಿದ್ದರೆ, ಅದನ್ನು ಅಂಥ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ, ಗೊತ್ತುವಳಿ ಅಥವಾ ದಾಖಲೆ ಅಥವಾ ರಿಜಿಸ್ಟರ್‌ನಲ್ಲಿ ಇರುವ ನಮೂದನ್ನು ಮೇಲ್ನೋಟದ ಸಾಕ್ಷ್ಯವೆಂಬುದಾಗಿ ಸ್ವೀಕರಿಸತಕ್ಕದ್ದು ಮತ್ತು ವಿಷಯಗಳ ಸಾಕ್ಷಿಯಾಗಿ ಅಂಗೀಕರಿಸತಕ್ಕದ್ದು ಹಾಗೂ ಮೂಲ ದಾಖಲೆಗಳನ್ನೇ ಸಲ್ಲಿಸಿದ್ದರೆ ಅದನ್ನು ದಾಖಲಿಸಿರುವ ವಿಷಯಗಳು ಮತ್ತು ವಹಿವಾಟುಗಳ ಸಾಕ್ಷ್ಯವಾಗಿ ಅಂಗೀಕರಿಸಲಾಗುತ್ತಿತ್ತೋ, ಅದೇ ರೀತಿಯಲ್ಲಿ ಇವನ್ನೂ ಸಾಕ್ಷ್ಯವಾಗಿ ಅಂಗೀಕರಿಸತಕ್ಕದ್ದು.

**55. ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ.–** ರಾಜ್ಯಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಥವಾ ಅದರಲ್ಲಿ ಇರುವ ಯಾವುವೇ ಉಪಬಂಧಗಳನ್ನು ಅಥವಾ ಅದರಡಿಯಲ್ಲಿ ರಚಿಸಿದ ಯಾವುವೇ ನಿಯಮಗಳು ಅಥವಾ ಆದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿರ್ದೇಶನ ನೀಡುವುದು ಅವಶ್ಯವೆಂದು ಅಥವಾ ಉಚಿತವೆಂದು ಅಭಿಪ್ರಾಯಪಟ್ಟಲ್ಲಿ ಅದು ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ ಅಥವಾ ಸಂದರ್ಭಾನುಸಾರವಾಗಿ ವ್ಯವಸ್ಥಾಪನಾ ಮಂಡಳಿಯು ಅಂಥ ಪ್ರತಿಯೊಂದು ನಿರ್ದೇಶನವನ್ನು ಪಾಲಿಸತಕ್ಕದ್ದು.

**56. ದಂಡಗಳು.–** (1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿತವಾದ ನಿಯಮಗಳ ಉಪಬಂಧಗಳನ್ನು ಅಥವಾ ಯಾವುದೇ ಪರೀಕ್ಷಾ ವಿಷಯಗಳನ್ನು ಅಥವಾ ಪದವಿಗಳನ್ನು ನೀಡುವುದಕ್ಕೆ ಅಥವಾ ಅಂಕಪಟ್ಟಿಗಳನ್ನು ನೀಡುವುದಕ್ಕೆ ಸಂಬಂಧಪಟ್ಟ ವಿಷಯಗಳಲ್ಲಿ ಉಲ್ಲಂಘನೆಗಳನ್ನು ಮಾಡುವ ಯಾವೊಬ್ಬ ವ್ಯಕ್ತಿಯು, ಅಪರಾಧ ನಿರ್ಣಯವಾದ ಮೇಲೆ, ಐವತ್ತು ಸಾವಿರ ರೂಪಾಯಿಗಳಿಗೆ ಕಡಿಮೆಯಲ್ಲದ ಆದರೆ ಹತ್ತು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಆರುತಿಂಗಳ ಅವಧಿಗಿಂತ ಕಡಿಮೆಯಲ್ಲದ ಆದರೆ ಎರಡು ವರ್ಷಗಳ ಅವಧಿಯವರೆಗೆ ವಿಸ್ತರಿಸಬಹುದಾದ ಕಾರಾವಾಸದಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು;

ಪರಂತು, ವಿಶ್ವವಿದ್ಯಾಲಯವೂ ಸಹ ಒಳಗೊಂಡಿರುವಲ್ಲಿ, ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಈ ಅಧಿನಿಯಮದ ಅಡಿಯಲ್ಲಿ ನೀಡಲಾದ ಅನುಮತಿ ಪತ್ರವನ್ನು ಹಿಂತೆಗೆದುಕೊಳ್ಳತಕ್ಕದ್ದು.

(2) ಈ ಪ್ರಕರಣದ ಅಡಿಯಲ್ಲಿಯ ದಂಡವನ್ನು ಇತರ ಯಾವುದೇ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಲಾದ ದಂಡಕ್ಕೆ ಬಾಧಕವಾಗದಂತೆ ವಿಧಿಸಬಹುದು.

**57. ಪ್ರವೇಶಿಸುವ ಮತ್ತು ಪರಿಶೋಧಿಸುವ ಅಧಿಕಾರ.–** ಈ ಉದ್ದೇಶಕ್ಕಾಗಿ, ರಾಜ್ಯಸರ್ಕಾರದಿಂದ ಪ್ರಾಧಿಕೃತಗೊಂಡ 'ಎ' ಸಮೂಹದ ಅಧಿಕಾರಿ ದರ್ಜೆಗಿಂತ ಕಡಿಮೆಇಲ್ಲದ ದರ್ಜೆಯ ಯಾವೊಬ್ಬ ಅಧಿಕಾರಿಯು, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಶನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ 37) ಅಡಿಯಲ್ಲಿ ನಿರ್ದಿಷ್ಟಪಡಿಸಿರಬಹುದಾದ ಅಂಥ ಷರತ್ತುಗಳಿಗೆ ಒಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ, ಆ ಅಧಿನಿಯಮದ

ಈ ಪ್ರಕರಣದ ಅಡಿಯಲ್ಲಿ ಉಪಬಂಧಿಸಲಾದಂತಹವೇ ಅಧಿಕಾರಗಳನ್ನು ಚಲಾಯಿಸಲು ಮತ್ತು ಪ್ರಕಾರ್ಯಗಳನ್ನು ನೆರವೇರಿಸಲು ಅಧಿಕೃತನಾದ ಅಧಿಕಾರಿ ಎಂಬುದಾಗಿ ಭಾವಿಸತಕ್ಕದ್ದು.

**58. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ನಿರ್ದೇಶನವನ್ನು ನೀಡುವ ಅಧಿಕಾರ.**– (1) ವಿಶ್ವವಿದ್ಯಾಲಯವು ತನ್ನ ರಚನೆ ಅಥವಾ ನಿಗಮನವನ್ನು ನಿಯಂತ್ರಿಸುವ ಕಾನೂನಿಗೆ ಅನುಸಾರವಾಗಿ ತನ್ನ ಸಮಾಪನವನ್ನು ಉದ್ದೇಶಿಸಿದ್ದಲ್ಲಿ, ಅದು ಕನಿಷ್ಠ ಆರು ತಿಂಗಳ ಲಿಖಿತ ಪೂರ್ವ ಸೂಚನೆಯನ್ನು (ನೋಟೀಸು) ಸರ್ಕಾರಕ್ಕೆ ನೀಡತಕ್ಕದ್ದು.

(2) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಈ ಕೆಳಗಿನವುಗಳ ಬಗ್ಗೆ, ಎಂದರೆ:–

(i) ಪದವಿಯನ್ನು ನೀಡುವುದಕ್ಕಾಗಿ ಬೋಧನೆಯ ಗುಣಮಟ್ಟ;

(ii) ಶಿಕ್ಷಣದ ಗುಣಮಟ್ಟ;

(iii) ಉನ್ನತ ಶಿಕ್ಷಣದ ವ್ಯಾಪಾರೀಕರಣವನ್ನು ತಡೆಗಟ್ಟುವುದು;

(iv) ಅಧಿನಿಯಮದ ಉಪಬಂಧಗಳ ಉಲ್ಲಂಘನೆಯ ಬಗ್ಗೆ, ಯಾವುದಾದರೂ ಇದ್ದಲ್ಲಿ,

– ಇವುಗಳ ಬಗ್ಗೆ ನಿಯತಕಾಲಿಕ ಪರಿವೀಕ್ಷಣೆಯನ್ನು ನಡೆಸತಕ್ಕದ್ದು ಮತ್ತು ಸರ್ಕಾರಕ್ಕೆ ವರದಿಯನ್ನು ಕಳುಹಿಸತಕ್ಕದ್ದು.

(3) ದುರ್ವ್ಯವಹರಣೆ, ದುರಾಡಳಿತ ಮತ್ತು ಅಶಿಸ್ತು ಆಗಿದೆ ಎಂಬುದನ್ನು ಗುರುತಿಸಿದರೆ, ಸರ್ಕಾರವು, ವಿಶ್ವವಿದ್ಯಾಲಯದ ಆಡಳಿತ ವರ್ಗದವರಿಗೆ ಆಡಳಿತವನ್ನು ಸರಿಪಡಿಸಬೇಕೆಂದು ನಿರ್ದೇಶನಗಳನ್ನು ನೀಡತಕ್ಕದ್ದು. ನಿಯಮಿಸಬಹುದಾದ ಅಂಥ ಅವಧಿಯೊಳಗೆ ಆ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುವ ಹಕ್ಕು ಸರ್ಕಾರದಲ್ಲಿ ನಿಹಿತವಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ವಿಧಾನವು, ಸರ್ಕಾರವು ಈ ಸಂಬಂಧದಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು:

ಪರಂತು, ವಿಶ್ವವಿದ್ಯಾಲಯವು ತನ್ನ ಕಾರಣಗಳನ್ನು ಹೇಳಿಕೊಳ್ಳಲು ಸಮಂಜಸ ಅವಕಾಶಗಳನ್ನು ನೀಡಿದ ಹೊರತು ಅಂಥ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

(5) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೋಟೀಸನ್ನು ಸ್ವೀಕರಿಸಿದ ಮೇಲೆ, ಸರ್ಕಾರವು ಸಂಬಂಧಿಸಿದ ನಿಯಂತ್ರಣಾ ಪ್ರಾಧಿಕಾರದೊಡನೆ ಸಮಾಲೋಚಿಸಿ, ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ಅಥವಾ ವ್ಯಾಸಂಗ ಕ್ರಮವನ್ನು ಪರಿಸಮಾಪನಗೊಳಿಸಲು ಉದ್ದೇಶಿಸಿದ ದಿನಾಂಕದಿಂದ, ವಿಶ್ವವಿದ್ಯಾಲಯದಲ್ಲಿ ನಿಯತ ವ್ಯಾಸಂಗ ಕ್ರಮಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕೊನೆಯ ತಂಡ (ಬ್ಯಾಚ್) ತನ್ನ ವ್ಯಾಸಂಗ ಕ್ರಮವನ್ನು ಮುಗಿಸುವವರೆಗೆ ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು.

**59. ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು.**– (1) 58ನೇ ಪ್ರಕರಣದ (5)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ಅದರ ಆಡಳಿತಾತ್ಮಕ ವೆಚ್ಚಗಳನ್ನು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿ, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಭರಿಸತಕ್ಕದ್ದು.

(2) ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ವಿಶ್ವವಿದ್ಯಾಲಯದ ವೆಚ್ಚವನ್ನು ಭರಿಸಲು 47, 48, 49 ಮತ್ತು 50ನೇ ಪ್ರಕರಣಗಳ ಅಡಿಯಲ್ಲಿ ಉಲ್ಲೇಖಿಸಲಾದ ನಿಧಿಯು ಸಾಕಷ್ಟು ಇಲ್ಲದಿದ್ದಲ್ಲಿ, ಅಂಥ ವೆಚ್ಚವನ್ನು ಸರ್ಕಾರವು, ವಿಶ್ವವಿದ್ಯಾಲಯದ ಸ್ವತ್ತುಗಳು ಮತ್ತು ಆಸ್ತಿಗಳನ್ನು ವಿಲೇ ಮಾಡುವ ಮೂಲಕ ಭರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಸಮಾಪನೆಯು ದುರ್ವ್ಯವಹರಣೆ ಅಥವಾ ದುರಾಡಳಿತದ ಕಾರಣಗಳಿಗಾಗಿ ಆಗಿದ್ದರೆ, ಸರ್ಕಾರವು ಅಂಥ ದುರ್ವ್ಯವಹಾರಕ್ಕೆ ಅಥವಾ ದುರಾಡಳಿತಕ್ಕೆ ಹೊಣೆಯಾಗಿರುವ ವ್ಯಕ್ತಿಗಳನ್ನು ಗುರುತಿಸುವ ಮತ್ತು ಅವರ ಮೇಲೆ ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ದಂಡನೆಯನ್ನು ವಿಧಿಸಲು ಸ್ವತಂತ್ರವಾಗಿರತಕ್ಕದ್ದು.

**60. ತೊಂದರೆಗಳ ನಿವಾರಣೆಗೆ ಅಧಿಕಾರ.**– (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಅಥವಾ ಆದೇಶದ ಮೂಲಕ ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಐದು ವರ್ಷಗಳು ಮುಕ್ತಾಯವಾದ ತರುವಾಯ ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಅಧಿಸೂಚನೆ ಅಥವಾ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

**61. ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ.–** (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ಹೊರಡಿಸಲಾದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಉಭಯ ಸದನಗಳು ಒಪ್ಪಿದರೆ ತದನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ಧತಿಯು ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವನ್ನು ಉಂಟುಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಜಿ.ಕೆ.ಬೋರೇಗೌಡ**

ಸರ್ಕಾರದ ಕಾರ್ಯದರ್ಶಿ

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) (೫೦೦ ಪ್ರತಿಗಳು)

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| | | |
|---|---|---|
| ಭಾಗ - IV-A | ಬೆಂಗಳೂರು, ಗುರುವಾರ, ಫೆಬ್ರವರಿ ೭, ೨೦೧೩ (ಮಾಘ ೧೮, ಶಕ ವರ್ಷ ೧೯೩೪) | ನಂ.೧೫೬ |
| Part - IV-A | Bangalore, Thursday, February 7, 2013 (Magha 18, Shaka Varsha 1934) | No. 156 |

## ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ

### ಅಧಿಸೂಚನೆ

**ಸಂಖ್ಯೆ: ಸಂವ್ಯಶಾಇ 29 ಶಾಸನ 2012, ಬೆಂಗಳೂರು, ದಿನಾಂಕ: 07.02.2013**

ಎಂ.ಎಸ್. ರಾಮಯ್ಯ ಅನ್ವಯಿಕ ವಿಜ್ಞಾನಗಳ ವಿಶ್ವವಿದ್ಯಾಲಯ ವಿಧೇಯಕ, 2012 – ಇದಕ್ಕೆ 2013ರ ಫೆಬ್ರವರಿ ತಿಂಗಳ ಐದನೇ ದಿನಾಂಕದಂದು ಘನತೆವೆತ್ತ ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2013ರ ಕರ್ನಾಟಕ ಅಧಿನಿಯಮ ಸಂಖ್ಯೆ: 15 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2013 ರ ಕರ್ನಾಟಕ ಅಧಿನಿಯಮ ಸಂಖ್ಯೆ: 15**

(2013ರ ಫೆಬ್ರವರಿ ಮಾಹೆಯ ಏಳನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಎಂ. ಎಸ್. ರಾಮಯ್ಯ ಅನ್ವಯಿಕ ವಿಜ್ಞಾನಗಳ ವಿಶ್ವವಿದ್ಯಾಲಯ ಅಧಿನಿಯಮ, 2012**

(2013ರ ಫೆಬ್ರವರಿ ಮಾಹೆಯ ಐದನೇ ದಿನಾಂಕದಂದು ರಾಜ್ಯಪಾಲರ ಅನುಮತಿಯನ್ನು ಪಡೆಯಲಾಗಿದೆ)

ಗೋಕುಲ ಶೈಕ್ಷಣಿಕ ಪ್ರತಿಷ್ಠಾನ (ವೈದ್ಯಕೀಯ) ಇವರು ತಾಂತ್ರಿಕ, ಆರೋಗ್ಯ, ವ್ಯವಸ್ಥಾಪನೆ, ಜೀವನ ವಿಜ್ಞಾನಗಳ ಮತ್ತು ತತ್ಸಂಬಂಧಿ ವಲಯಗಳಲ್ಲಿ ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಉತ್ತೇಜಿಸಲು ಮತ್ತು ಕೈಗೊಳ್ಳಲು ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ಅನ್ವಯಿಕ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದಕ್ಕಾಗಿ ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡು ಬರುವ ಉದ್ದೇಶಗಳಿಗಾಗಿ ಗೋಕುಲ ಶೈಕ್ಷಣಿಕ ಪ್ರತಿಷ್ಠಾನ (ವೈದ್ಯಕೀಯ) ಇವರು ತಾಂತ್ರಿಕ, ಆರೋಗ್ಯ, ವ್ಯವಸ್ಥಾಪನೆ, ಜೀವನ ವಿಜ್ಞಾನಗಳ ಮತ್ತು ತತ್ಸಂಬಂಧಿ ವಲಯಗಳಲ್ಲಿ ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಉತ್ತೇಜಿಸಲು ಮತ್ತು ಕೈಗೊಳ್ಳಲು ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ಅನ್ವಯಿಕ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೂರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

## ಅಧ್ಯಾಯ – I
## ಪ್ರಾರಂಭಿಕ

**1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.–** (1) ಈ ಅಧಿನಿಯಮವನ್ನು ಎಂ.ಎಸ್. ರಾಮಯ್ಯ ಅನ್ವಯಿಕ ವಿಜ್ಞಾನಗಳ ವಿಶ್ವವಿದ್ಯಾಲಯ ಅಧಿನಿಯಮ, 2012 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. ಪರಿಭಾಷೆಗಳು.–** ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,–

(ಎ) "ಶೈಕ್ಷಣಿಕ ಪರಿಷತ್ತು (ಅಕೆಡೆಮಿಕ್ ಕೌನ್ಸಿಲ್)" ಎಂದರೆ, 25ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿಸಲಾದ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು;

(ಬಿ) "ಕಾರ್ಯಸೂಚಿ ವಿಷಯಗಳು", ಎಂದರೆ, ಪರಿನಿಯಮಗಳಲ್ಲಿ ಹೆಸರಿಸಬಹುದಾದ ಮತ್ತು ಒಂದು ಸಭೆಯಲ್ಲಿ ಆ ವಿಷಯಗಳನ್ನು ಮತ್ತು ಕಲಾಪಗಳನ್ನು ಅನುಮೋದಿಸಬಹುದೆಂದು ತಮ್ಮ ಸಮ್ಮತಿ ಸೂಚಿಸಿ ಕುಲಾಧಿಪತಿಯವರು ಮುಂಚಿತವಾಗಿಯೇ ಲಿಖಿತ ಅನುಮೋದನೆಯನ್ನು ಕೊಟ್ಟಿದ್ದಾಗ ಮಾತ್ರವೇ ಸಂದರ್ಭಾನುಸಾರ ಪ್ರಬಂಧಕರ ಮಂಡಳಿ ಅಥವಾ ವ್ಯವಸ್ಥಾಪನಾ ಮಂಡಳಿ ಅಥವಾ ಯಾವುದೇ ಸಮಿತಿಯವರು ಕಾರ್ಯಸೂಚಿಯಲ್ಲಿ ಸೇರಿಸಬಹುದಾದ ಅಥವಾ ಸಭೆಯಲ್ಲಿ ಚರ್ಚೆಗೆ ತೆಗೆದುಕೊಂಡು ನಿರ್ಣಯವನ್ನು ಕೊಡಬಹುದಾದ ಎಲ್ಲಾ ವಿಷಯಗಳು ಮತ್ತು ಕಲಾಪಗಳು;

(ಸಿ) "ಪ್ರಬಂಧಕರ ಮಂಡಳಿ" ಎಂದರೆ, 23ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಪ್ರಬಂಧಕರ ಮಂಡಳಿ;

(ಡಿ) "ವ್ಯವಸ್ಥಾಪನಾ ಮಂಡಳಿ" ಎಂದರೆ, 24ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಆಡಳಿತ ಮಂಡಳಿ;

(ಇ) "ಕುಲಾಧಿಪತಿ", "ಕುಲಪತಿ", "ಸಹಕುಲಪತಿ" ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ ಮತ್ತು ಸಹಕುಲಪತಿ;

(ಎಫ್) "ಕ್ಯಾಂಪಸ್" ಎಂದರೆ, ಅದು ಎಲ್ಲಾದರೂ ಇರಲಿ ವಿಶ್ವವಿದ್ಯಾಲಯವು ಸ್ಥಾಪಿಸಿದ, ನಿರ್ವಹಿಸುವ ಒಂದು ಕ್ಯಾಂಪಸ್;

(ಜಿ) "ಸಮಿತಿಗಳು" ಎಂದರೆ, ಈ ಅಧಿನಿಯಮದಡಿಯಲ್ಲಿ ರೂಪಿಸಲಾದ ಸಮಿತಿಗಳು ಅಥವಾ ಸಂದರ್ಭಾನುಸಾರವಾಗಿ ವಿಶ್ವವಿದ್ಯಾಲಯದ ವಿವಿಧ ಕಾರ್ಯಕರ್ತರು ರಚಿಸಿರುವ ಸಮಿತಿಗಳು ಮತ್ತು ಅದರಲ್ಲಿ ನಾಮನಿರ್ದೇಶನ ಸಮಿತಿ, ಹಣಕಾಸು ಸಮಿತಿ, ದೂರಶಿಕ್ಷಣ ಸಮಿತಿ ಮತ್ತು ಅಂಥ ಇತರ ಸಮಿತಿಗಳು ಒಳಗೊಳ್ಳುತ್ತವೆ;

(ಎಚ್) "ಘಟಕ ಕಾಲೇಜು" ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುತ್ತಿರುವ ಒಂದು ಕಾಲೇಜು ಅಥವಾ ಸಂಸ್ಥೆ;

(ಐ) "ಹಣಕಾಸು ಸಮಿತಿ" ಎಂದರೆ, 27ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಹಣಕಾಸು ಸಮಿತಿ;

(ಜೆ) "ಪ್ರತಿಷ್ಠಾನ" ಎಂದರೆ ಭಾರತೀಯ ನ್ಯಾಸ ಅಧಿನಿಯಮ, 1982ರ ಅಡಿಯಲ್ಲಿ ನೋಂದಣಿಯಾದ ಗೋಕುಲ ಶೈಕ್ಷಣಿಕ ಪ್ರತಿಷ್ಠಾನ(ವೈದ್ಯಕೀಯ);

(ಕೆ) "ಸರ್ಕಾರ" ಎಂದರೆ, ಕರ್ನಾಟಕ ಸರ್ಕಾರ;

(ಎಲ್) "ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳು" ಎಂದರೆ, ವಿಶ್ವವಿದ್ಯಾಲಯ ಅನುದಾನ ಆಯೋಗ, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು, ರಾಷ್ಟ್ರೀಯ ಬೋಧಕ ಶಿಕ್ಷಣ ಪರಿಷತ್ತು, ಭಾರತೀಯ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಪರಿಷತ್ತು, ಭಾರತೀಯ ಔಷಧ ವಿಜ್ಞಾನ ಪರಿಷತ್ತು, ಭಾರತೀಯ ಕೃಷಿ ಸಂಶೋಧನಾ ಪರಿಷತ್ತು, ರಾಷ್ಟ್ರೀಯ ಮೌಲ್ಯಮಾಪನ ಮತ್ತು ಅಧಿಮಾನ್ಯತಾ ಪರಿಷತ್ತು, ದೂರಶಿಕ್ಷಣ ಪರಿಷತ್ತು, ವೈಜ್ಞಾನಿಕ ಮತ್ತು ಭಾರತೀಯ ಸಂಶೋಧನಾ ಪರಿಷತ್ತು ಮುಂತಾದ, ಉನ್ನತ ಶಿಕ್ಷಣದಲ್ಲಿ

ಗುಣಮಟ್ಟದ ಶಿಕ್ಷಣ ದೊರೆಯುವಂತೆ ನೋಡಿಕೊಳ್ಳುವುದಕ್ಕಾಗಿ ಗುಣಮಟ್ಟಗಳು ಮತ್ತು ಷರತ್ತುಗಳನ್ನು ವಿಧಿಸುವುದಕ್ಕಾಗಿ, ಕೇಂದ್ರ ಸರ್ಕಾರವು ಸ್ಥಾಪಿಸಿರುವ ಒಂದು ಸಂಸ್ಥೆ ಮತ್ತು ಇದರಲ್ಲಿ ಸರ್ಕಾರವೂ ಸೇರಿರುತ್ತದೆ;

(ಎಂ) "ನಿಯಮಿಸಲಾದುದು" ಎಂದರೆ, ಈ ಅಧಿನಿಯಮದಡಿಯಲ್ಲಿ ಸರ್ಕಾರವು ರಚಿಸಲಾದ ನಿಯಮಗಳ ಮೂಲಕ ನಿಯಮಿಸಲಾದುದು;

(ಎನ್) "ಒಂದು ಘಟಕ ಕಾಲೇಜಿಗೆ ಸಂಬಂಧಪಟ್ಟಂತೆ ಪ್ರಾಂಶುಪಾಲರು" ಎಂದರೆ, ಘಟಕ ಕಾಲೇಜಿನ ಮುಖ್ಯಸ್ಥರು ಮತ್ತು ನೇಮಕವಾದ ಪ್ರಾಂಶುಪಾಲರು ಇಲ್ಲದಿದ್ದಲ್ಲಿ ಅಥವಾ ನೇಮಕವಾದ ಪ್ರಾಂಶುಪಾಲರ ಗೈರುಹಾಜರಿಯಲ್ಲಿ, ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ತಾತ್ಕಾಲಿಕವಾಗಿ ನೇಮಕಗೊಂಡಿರುವ ಉಪಪ್ರಾಂಶುಪಾಲರು ಅಥವಾ ಯಾವುದೇ ಇತರ ವ್ಯಕ್ತಿಯೂ ಇದರಲ್ಲಿ ಒಳಗೊಳ್ಳುತ್ತಾರೆ;

(ಒ) "ಕುಲಸಚಿವರು" ಎಂದರೆ, ವಿಶ್ವವಿದ್ಯಾಲಯದ ಕುಲಸಚಿವರು;

(ಪಿ) "ಪ್ರಾದೇಶಿಕ ಕೇಂದ್ರ" ಎಂದರೆ, ಯಾವುದೇ ಪ್ರದೇಶದಲ್ಲಿನ ಅಧ್ಯಯನ ಕೇಂದ್ರಗಳ ಕಾರ್ಯವನ್ನು ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ಮಾಡುವ ಉದ್ದೇಶಕ್ಕಾಗಿ ಮತ್ತು ಅಂಥ ಕೇಂದ್ರಕ್ಕೆ ವ್ಯವಸ್ಥಾಪನಾ ಮಂಡಳಿಯು ವಹಿಸಿಕೊಡಬಹುದಾದ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸುವುದಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಅಥವಾ ನಿರ್ವಹಿಸಿಕೊಂಡುಬರುವ ಒಂದು ಕೇಂದ್ರ;

(ಕ್ಯೂ) ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ "ಪ್ರಾಯೋಜಕ ಪ್ರಾಧಿಕಾರ" ಅಥವಾ "ಪ್ರಾಯೋಜಕ ಸಂಸ್ಥೆ" ಎಂದರೆ, ಪ್ರತಿಷ್ಠಾನ;

(ಆರ್) "ರಾಜ್ಯ" ಎಂದರೆ, ಕರ್ನಾಟಕ ರಾಜ್ಯ;

(ಎಸ್) "ಪರಿನಿಯಮಗಳು" ಮತ್ತು "ವಿನಿಯಮಗಳು" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಅನುಕ್ರಮವಾಗಿ ವಿಶ್ವವಿದ್ಯಾಲಯದ ಪರಿನಿಯಮಗಳು ಮತ್ತು ವಿನಿಯಮಗಳು;

(ಟಿ) "ಅಧ್ಯಯನ ಕೇಂದ್ರ" ಎಂದರೆ, ಶಿಕ್ಷಣದ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಅಗತ್ಯವಾದ ಬುದ್ಧಿವಾದ, ಸಲಹೆಗಳನ್ನು ನೀಡುವ ಅಥವಾ ಇತರ ಯಾವುದೇ ನೆರವನ್ನು ನೀಡುವ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಮತ್ತು ನಿರ್ವಹಿಸಿಕೊಂಡುಬಂದ ಒಂದು ಕೇಂದ್ರ;

(ಯು) "ಅಧ್ಯಾಪಕರು" ಎಂದರೆ, ಒಬ್ಬ ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಒಂದು ಘಟಕ ಕಾಲೇಜಿನಲ್ಲಿ ಬೋಧಿಸುವುದಕ್ಕೆ ಅಥವಾ ಸಂಶೋಧನೆ ನಡೆಸುವುದಕ್ಕೆ ಅಥವಾ ಸಂಶೋಧನೆಗೆ ಮಾರ್ಗದರ್ಶನ ನೀಡುವುದಕ್ಕೆ ನೇಮಕವಾದ ಅಂಥ ಇತರ ವ್ಯಕ್ತಿ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗವು ನಿಯಮಿಸಿದ ಗುಣಮಟ್ಟಗಳಿಗೆ ಅನುಸಾರವಾಗಿ ಇರುವ ಘಟಕ ಕಾಲೇಜಿನ ಪ್ರಾಂಶುಪಾಲರು ಇದರಲ್ಲಿ ಒಳಗೊಳ್ಳುತ್ತಾರೆ;

(ವಿ) "ವಿಶ್ವವಿದ್ಯಾಲಯ ಅನುದಾನಗಳ ಆಯೋಗ" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) 4ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ಆಯೋಗ;

(ಡಬ್ಲ್ಯೂ) "ವಿಶ್ವವಿದ್ಯಾಲಯ" ಎಂದರೆ, ಈ ಅಧಿನಿಯಮದಡಿಯಲ್ಲಿ ಸ್ಥಾಪಿಸಿ ನಿಗಮಿತಗೊಳಿಸಲಾದ ಎಂ. ಎಸ್. ರಾಮಯ್ಯ ಅನ್ವಯಿಕ ವಿಜ್ಞಾನಗಳ ವಿಶ್ವವಿದ್ಯಾಲಯ;

(ಎಕ್ಸ್) "ಸಂದರ್ಶಕರು" ಎಂದರೆ, 13ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ವಿಶ್ವವಿದ್ಯಾಲಯದ ಸಂದರ್ಶಕರು.

## ಅಧ್ಯಾಯ– II

## ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

3. **ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ.–** (1) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಹಕ್ಕನ್ನು ಪ್ರತಿಷ್ಠಾನವು ಹೊಂದಿರತಕ್ಕದ್ದು.

(2) ಪ್ರತಿಷ್ಠಾನವು ರಾಜ್ಯ ಸರ್ಕಾರಕ್ಕೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವವನ್ನು ಸಲ್ಲಿಸತಕ್ಕದ್ದು.

(3) ಈ ಮುಂದಿನ ವಿವರಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಪ್ರತಿಷ್ಠಾನವು ವಿವರಗಳೊಂದಿಗೆ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು;

(ii) ವಿಶ್ವವಿದ್ಯಾಲಯದ ವ್ಯಾಪ್ತಿ ಮತ್ತು ಸ್ಥಾನಮಾನ ಹಾಗೂ ಭೂಮಿಯ ಲಭ್ಯತೆ;

(iii) ಪ್ರಾರಂಭದ ದಿನಾಂಕದಿಂದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳಬೇಕೆಂದಿರುವ ಅಧ್ಯಯನ ಮತ್ತು ಸಂಶೋಧನಾ ಕಾರ್ಯಕ್ರಮಗಳ ಸ್ವರೂಪ ಮತ್ತು ಬಗೆಗಳು;

(iv) ಪ್ರಾರಂಭಿಸಬೇಕೆಂದು ಪ್ರಸ್ತಾಪಿಸಿರುವ ವ್ಯಾಸಂಗ ವಿಭಾಗಗಳು (ಫ್ಯಾಕಲ್ಟಿಗಳು), ಅಧ್ಯಯನ ಕ್ರಮಗಳು ಮತ್ತು ಸಂಶೋಧನೆಗಳ ಸ್ವರೂಪ;

(v) ಕಟ್ಟಡಗಳು, ಸಲಕರಣೆಗಳು ಮತ್ತು ರಚನಾ ಸೌಕರ್ಯಗಳನ್ನು ಒದಗಿಸುವಂಥ ಕ್ಯಾಂಪಸ್ ಅಭಿವೃದ್ಧಿ;

(vi) ಪ್ರಾರಂಭದ ದಿನಾಂಕದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಗಾಗಿ ಬಂಡವಾಳ ವೆಚ್ಚದ ಹಂತಗಳು;

(vii) ಬಾಬುವಾರು ಆವರ್ತಕ ವೆಚ್ಚ, ಆರ್ಥಿಕ ಮೂಲಗಳು ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ತಗಲುವ ಅಂದಾಜು ವೆಚ್ಚ;

(viii) ಸಂಪನ್ಮೂಲ ಸಂಗ್ರಹಣೆಗಾಗಿ ಯೋಜನೆ ಮತ್ತು ಅದಕ್ಕೆ ಬಂಡವಾಳದಿಂದ ತಗಲುವ ವೆಚ್ಚ ಹಾಗೂ ಪ್ರತಿಯೊಂದು ಮೂಲಕ್ಕೂ ಮರು ಸಂದಾಯ ಮಾಡುವ ರೀತಿ;

(ix) ವಿದ್ಯಾರ್ಥಿಗಳಿಂದ ಶುಲ್ಕ ವಸೂಲು ಮಾಡಿ ಆಂತರಿಕವಾಗಿ ನಿಧಿ ಸಂಗ್ರಹಿಸುವ ಯೋಜನೆ, ಸಲಹಾ ಸೇವೆ ಮತ್ತು ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಿಗೆ ಸಂಬಂಧಿಸಿದ ಇತರ ಚಟುವಟಿಕೆಗಳಿಂದ ನಿರೀಕ್ಷಿತ ವರಮಾನಗಳು ಮತ್ತು ಇತರ ನಿರೀಕ್ಷಿತ ವರಮಾನಗಳು;

(x) ಘಟಕವೊಂದಕ್ಕೆ ತಗಲುವ ವೆಚ್ಚದ ವಿವರಗಳು, ಆರ್ಥಿಕವಾಗಿ ದುರ್ಬಲವಾದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕ, ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿ ವೇತನದಲ್ಲಿ ನೀಡುವ ರಿಯಾಯಿತಿ ಅಥವಾ ವಿನಾಯತಿಯ ಪರಿಮಿತಿಯ ವಿವರಗಳನ್ನು ಮತ್ತು ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳಿಗೆ ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳು ಪ್ರಾಯೋಜಿಸಿದ ವಿದ್ಯಾರ್ಥಿಗಳಿಗೆ ಮತ್ತು ಭಾರತವನ್ನುಳಿದು ಇತರ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ವಿಧಿಸತಕ್ಕ ಶುಲ್ಕದ ದರಗಳು ಬೇರೆ ಬೇರೆ ಇದ್ದಲ್ಲಿ ಅವುಗಳನ್ನು ಸೂಚಿಸುವ ಶುಲ್ಕ ರಚನೆಯ ವಿವರಗಳು;

(xi) ಸಂಬಂಧಪಟ್ಟ ವಿದ್ಯಾ ವಿಭಾಗದಲ್ಲಿ ಎಷ್ಟು ವರ್ಷಗಳ ಅನುಭವ ಮತ್ತು ಪರಿಣಿತಿಯನ್ನು ಪ್ರತಿಷ್ಠಾನವು ದೊರಕಿಸಿಕೊಡಲಿದೆ ಹಾಗೂ ಅದರ ಹಣಕಾಸಿನ ಸಂಪನ್ಮೂಲಗಳು;

(xii) ವಿಶ್ವವಿದ್ಯಾಲಯದಲ್ಲಿರುವ ಅಧ್ಯಯನ ಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕಾಗಿ ಇರುವ ವ್ಯವಸ್ಥೆ;

(xiii) ವಿಶ್ವವಿದ್ಯಾಲಯವು ಸ್ಥಾಪನೆಯಾಗುವುದಕ್ಕೆ ಮೊದಲು ನೆರವೇರಿಸಬೇಕೆಂದು ರಾಜ್ಯ ಸರ್ಕಾರವು ಅಗತ್ಯಪಡಿಸಬಹುದಾದ ಅಂಥ ಇತರ ಷರತ್ತುಗಳ ನೆರವೇರಿಕೆಯ ಹಂತ.

(4) ಸ್ವೀಕರಿಸಿದ ಪ್ರಸ್ತಾವಗಳನ್ನು ಪರೀಕ್ಷಿಸಲು ರಾಜ್ಯ ಸರ್ಕಾರವು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಪದನಿಮಿತ್ತ ಸದಸ್ಯರಾದ ಮೂರು ಸದಸ್ಯರುಗಳನ್ನು ಒಳಗೊಂಡ ಒಂದು ಪರಿಶೋಧನಾ ಸಮಿತಿಯನ್ನು ರಚಿಸತಕ್ಕದ್ದು ಮತ್ತು ಅದು ರಾಜ್ಯ ಸರ್ಕಾರಕ್ಕೆ ಶಿಫಾರಸ್ಸನ್ನು ಮಾಡತಕ್ಕದ್ದು.

**4. ವಿಶ್ವವಿದ್ಯಾಲಯದ ಸ್ಥಾಪನೆ.–** (1) ರಾಜ್ಯ ಸರ್ಕಾರವು ಪರಿಶೋಧನಾ ಸಮಿತಿಯು ಮಾಡಿದ ಶಿಫಾರಸ್ಸುಗಳನ್ನು ಪರಿಶೀಲಿಸಿದ ತರುವಾಯ ಮತ್ತು ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ,–

(i) ಪ್ರತಿಷ್ಠಾನವು ಸಾಕಷ್ಟು ಮೂಲ ಸೌಕರ್ಯದೊಂದಿಗೆ ವಿಶ್ವವಿದ್ಯಾಲಯವೊಂದನ್ನು ನಡೆಸಲು ಸಮರ್ಥವಾಗಿದೆ ಎಂದು ಅದು ಮನಗಂಡರೆ;

(ii) ಪ್ರದೇಶಕ್ಕನುಸಾರವಾಗಿ ಕೆಳಗೆ ನಿರ್ದಿಷ್ಟ ಪಡಿಸಿದ ವ್ಯಾಪ್ತಿಗೆ ಭೂಮಿಯ ಒಡೆಯತನವನ್ನು ಹೊಂದಿರತಕ್ಕದ್ದು, ಎಂದರೆ:–

(ಎ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯೊಳಗಿದ್ದರೆ ಇಪ್ಪತ್ತೈದು ಎಕರೆಗಳು;

(ಬಿ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮಿತಿಯಿಂದ ಹೊರಗೆ ಇದ್ದು ಆದರೆ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಪ್ರದೇಶದ ಒಳಗೆ ಇದ್ದರೆ ನಲವತ್ತು ಎಕರೆಗಳು;

(ಸಿ) ಭೂಮಿಯು (ಎ) ಮತ್ತು (ಬಿ) ಖಂಡಗಳಲ್ಲಿ ನಿರ್ದಿಷ್ಟಪಡಿಸಿದ ಸ್ಥಳಗಳನ್ನು ಹೊರತುಪಡಿಸಿದ್ದರೆ ಅರವತ್ತು ಎಕರೆಗಳಿಗಿಂತ ಕಡಿಮೆ ಇರತಕ್ಕದ್ದಲ್ಲ.

ಮೇಲೆ ನಿರ್ದಿಷ್ಟಪಡಿಸಿದ ಭೂಮಿಯು ಏಕ ಘಟಕ(ಸಿಂಗಲ್ ಬ್ಲಾಕ್) ದಲ್ಲಿರತಕ್ಕದ್ದು ಮತ್ತು ಇದು ಸಂಬಂಧಪಟ್ಟ ನ್ಯಾಸ / ಪ್ರತಿಷ್ಠಾನ / ಸಂಸ್ಥೆ / ವಿಶ್ವವಿದ್ಯಾಲಯದ ಹೆಸರಿನಲ್ಲಿರತಕ್ಕದ್ದು. 3ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ಅಗತ್ಯಪಡಿಸಲಾದಂತೆ ನ್ಯಾಸವು ಒದಗಿಸಿದ ವಿವರಗಳ ಆಧಾರದ ಮೇಲೆ ಸರ್ಕಾರವು 47ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಬೇಕೆಂದು ನ್ಯಾಸಕ್ಕೆ ನಿರ್ದೇಶನ ನೀಡಬಹುದು.

(2) ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಸ್ಥಾಪನೆಯ ತರುವಾಯ, ರಾಜ್ಯ ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, "ಎಂ.ಎಸ್. ರಾಮಯ್ಯ ಅನ್ವಯಿಕ ವಿಜ್ಞಾನಗಳ ವಿಶ್ವವಿದ್ಯಾಲಯ" ಎಂಬ ಹೆಸರಿನ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ರಾಜ್ಯದಲ್ಲಿ ಸ್ಥಾಪಿಸುವುದಕ್ಕೆ ಮಂಜೂರಾತಿಯನ್ನು ನೀಡಬಹುದು.

(3) ವಿಶ್ವವಿದ್ಯಾಲಯದ ಕೇಂದ್ರಕಾರ್ಯಸ್ಥಾನವು ಬೆಂಗಳೂರಿನಲ್ಲಿ ಇರತಕ್ಕದ್ದು. ವಿಶ್ವವಿದ್ಯಾಲಯವು ತನ್ನ ಕ್ಯಾಂಪಸ್ಸುಗಳನ್ನು ಅಥವಾ ಪ್ರಾದೇಶಿಕ ಕೇಂದ್ರಗಳನ್ನು, ಅಧ್ಯಯನ ಕೇಂದ್ರಗಳನ್ನು ಕರ್ನಾಟಕದ ಯಾವುದೇ ಭಾಗದಲ್ಲಿ ಹೊಂದಿರತಕ್ಕದ್ದು ಮತ್ತು ಆ ಬಗ್ಗೆ ರಾಜ್ಯ ಸರ್ಕಾರದ ಪೂರ್ವಾನುಮತಿಯನ್ನು ಪಡೆದುಕೊಳ್ಳುವುದಕ್ಕೊಳಪಟ್ಟು ಹಾಗೂ ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗನುಸಾರವಾಗಿ ಹೊಂದಿರತಕ್ಕದ್ದು.

(4) ಮೊದಲ ಕುಲಾಧಿಪತಿಯವರು, ಮೊದಲ ಕುಲಪತಿಯವರು, ಪ್ರಬಂಧಕ ಮಂಡಳಿಯ ಮೊದಲ ಸದಸ್ಯರುಗಳು, ವ್ಯವಸ್ಥಾಪನಾ ಮಂಡಳಿಯ ಹಾಗೂ ಶೈಕ್ಷಣಿಕ ಪರಿಷತ್ತಿನ ಮೊದಲ ಸದಸ್ಯರುಗಳು ಮತ್ತು ಇನ್ನು ಮುಂದೆ, ಅಂಥ ಅಧಿಕಾರಿಗಳು ಅಥವಾ ಸದಸ್ಯರುಗಳಾಗಬಹುದಾದಂಥ ಎಲ್ಲಾ ವ್ಯಕ್ತಿಗಳು, ಅಂಥ ಪದ ಅಥವಾ ಸದಸ್ಯತ್ವವನ್ನು ಹೊಂದಿರುವುದು ಮುಂದುವರೆಯುವವರೆಗೆ, ಒಂದು ನಿಗಮಿತ ನಿಕಾಯವನ್ನು ರಚಿಸತಕ್ಕದ್ದು. ಮತ್ತು ಅದು ವಿಶ್ವವಿದ್ಯಾಲಯದ ಹೆಸರಿನಲ್ಲಿ ದಾವೆ ಹೂಡಬಹುದು ಮತ್ತು ದಾವೆಗೊಳಗಾಗಬಹುದು.

(5) (2)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯವು ಸ್ಥಾಪನೆಗೆ ಮಂಜೂರಾತಿಯಾದ ಮೇಲೆ, ವಿಶ್ವವಿದ್ಯಾಲಯದ ಉದ್ದೇಶಕ್ಕಾಗಿ, ಪ್ರತಿಷ್ಠಾನವು ಆರ್ಜಿಸಿದ, ಸೃಜಿಸಿದ, ಏರ್ಪಾಟು ಮಾಡಿಕೊಂಡ ಅಥವಾ ಕಟ್ಟಲ್ಪಟ್ಟ ಭೂಮಿ ಮತ್ತು ಇತರ ಸ್ಥಿರ ಮತ್ತು ಚರ ಸ್ವತ್ತು, ವಿಶ್ವವಿದ್ಯಾಲಯದಲ್ಲಿ ನಿಹಿತವಾಗಿರತಕ್ಕದ್ದು.

(6) ವಿಶ್ವವಿದ್ಯಾಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದ ಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂಥ ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

(7) ವಿಶ್ವವಿದ್ಯಾಲಯದಲ್ಲಿನ ಭೂಮಿ, ಕಟ್ಟಡ ಮತ್ತು ಇತರ ಸ್ವತ್ತುಗಳನ್ನು ವಿಶ್ವವಿದ್ಯಾಲಯದ ಉದ್ದೇಶಗಳಿಗೆ ಆನುಷಂಗಿಕವಾಗಿರುವುದನ್ನು ಹೊರತುಪಡಿಸಿ ಇತರ ಯಾವುದೇ ಉದ್ದೇಶಕ್ಕಾಗಿ ಬಳಸತಕ್ಕದ್ದಲ್ಲ.

**5. ಅನುದಾನಗಳು ಮತ್ತು ಹಣಕಾಸು ನೆರವು.–** ವಿಶ್ವವಿದ್ಯಾಲಯವು ಸ್ವಂತ ಧನಮೂಲ ಉಳ್ಳದ್ದಾಗಿರತಕ್ಕದ್ದು ಮತ್ತು ರಾಜ್ಯದಿಂದ ಅಥವಾ ರಾಜ್ಯದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಇತರ ಸಂಸ್ಥೆ ಅಥವಾ ನಿಗಮದಿಂದ ಯಾವುದೇ ನಿರ್ವಹಣಾ ಸಹಾಯ ಅನುದಾನ ಅಥವಾ ಯಾವುದೇ ಹಣಕಾಸು ನೆರವನ್ನು ಹಕ್ಕಿನಿಂದ ಕೇಳತಕ್ಕದ್ದಲ್ಲ ಅಥವಾ ಅದನ್ನು ಪಡೆಯಲು ಹಕ್ಕನ್ನು ಹೊಂದಿರತಕ್ಕದ್ದಲ್ಲ:

ಪರಂತು, ರಾಜ್ಯವು,–

(ಎ) ಇತರ ರಾಜ್ಯ ಸರ್ಕಾರದ ಸಂಘಟನೆಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿರುವಂಥದ್ದೇ ಸಂಶೋಧನೆ, ಅಭಿವೃದ್ಧಿ ಮತ್ತಿತರ ಚಟುವಟಿಕೆಗಳಿಗಾಗಿ; ಅಥವಾ

(ಬಿ) ಸರ್ಕಾರದಿಂದ ನೆರವನ್ನು ಪಡೆಯುವ ಯಾವುದೇ ನಿರ್ದಿಷ್ಟ ಸಂಶೋಧನೆ ಅಥವಾ ಕಾರ್ಯಕ್ರಮಗಳಿಗಾಗಿ; ಮತ್ತು

(ಸಿ) ರಾಜ್ಯ ಕಾರ್ಯನೀತಿಯ ಬದಲಾವಣೆಗೆ ಒಳಪಟ್ಟು ಅಥವಾ ಅನ್ಯಥಾ ಇದೇ ಬಗೆಯ ವಿಶ್ವವಿದ್ಯಾಲಯಗಳಿಗೆ ಅವಕಾಶವನ್ನು ಕಲ್ಪಿಸುವುದಕ್ಕೆ ಅಥವಾ ಅವುಗಳ ಪ್ರಯೋಜನಕ್ಕಾಗಿ,

–ಅನುದಾನದ ಮೂಲಕ ಅಥವಾ ಅನ್ಯಥಾ ಹಣಕಾಸು ಬೆಂಬಲವನ್ನು ಒದಗಿಸಬಹುದು:

ಮತ್ತು ಪರಂತು, ವಿಶ್ವವಿದ್ಯಾಲಯವು, ಯಾವುದೇ ಇತರ ಮೂಲದಿಂದ ಯಾವುದೇ ಆರ್ಥಿಕ ನೆರವನ್ನು ಸ್ವೀಕರಿಸಬಹುದು.

**6. ಘಟಕ ಕಾಲೇಜು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಅಥವಾ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದಕ್ಕೆ ಅಧಿಕಾರ.–** ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಐದು ವರ್ಷಗಳನ್ನು ಪೂರ್ಣಗೊಳಿಸಿದ ನಂತರ, ವಿಶ್ವವಿದ್ಯಾಲಯ ಅನುದಾನ ಆಯೋಗದ ಮತ್ತು ಇತರ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ಗುಣಮಟ್ಟಗಳಿಗೆ ಒಳಪಟ್ಟು, ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ, ವಿಶ್ವವಿದ್ಯಾಲಯವು, ರಾಜ್ಯದಲ್ಲಿ ತನಗೆ ಸೂಕ್ತವೆನಿಸುವಂಥ ಸ್ಥಳಗಳಲ್ಲಿ ಘಟಕ ಕಾಲೇಜುಗಳು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದಿರಬಹುದು.

**7. ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು.–** ವಿಶ್ವವಿದ್ಯಾಲಯವು, ತನ್ನ ಭವಿಷ್ಯದ್‌ದೃಷ್ಟಿ ಮತ್ತು ಧ್ಯೇಯೋದ್ದೇಶಗಳನ್ನು ಸಾಧಿಸಲು ಈ ಮುಂದಿನ ವಿಸ್ತೃತ ಕಾರ್ಯತಂತ್ರಗಳನ್ನು ಕೈಗೊಳ್ಳಬಹುದು:–

(i) ತಾಂತ್ರಿಕ, ಆರೋಗ್ಯ, ವ್ಯವಸ್ಥಾಪನೆ, ಜೀವನ ವಿಜ್ಞಾನ ಮತ್ತು ತತ್ಸಂಬಂಧಿತ ವಲಯಗಳಲ್ಲಿ ಸ್ನಾತಕೋತ್ತರ, ಡಾಕ್ಟೊರೇಟ್ ಪದವಿಯ (doctoral) ಮತ್ತು ಡಾಕ್ಟೊರೇಟ್ ಪದವಿ ನಂತರದ ವ್ಯಾಸಂಗ ವಿಷಯಗಳ ಕೋರ್ಸುಗಳವರೆಗೆ ಮತ್ತು ಅವುಗಳನ್ನು ಒಳಗೊಂಡಂತೆ ವಿಶ್ವವಿದ್ಯಾಲಯದ ಶಿಕ್ಷಣದಲ್ಲಿ ಮುಂದುವರಿಕೆಯನ್ನು ಮತ್ತು ಅನ್ವೇಷಣೆಯನ್ನು ಬೆಂಬಲಿಸುವುದು, ಉತ್ತೇಜಿಸುವುದು ಮತ್ತು ಕೈಗೆತ್ತಿಕೊಳ್ಳುವುದು;

(ii) ವಿನ್ಯಾಸ ಯೋಜನೆಯನ್ನು ರೂಪಿಸುವುದಕ್ಕಾಗಿ, ಅಭಿವೃದ್ಧಿಪಡಿಸುವುದಕ್ಕಾಗಿ ವಿದ್ಯಾರ್ಥಿಗಳಿಗೆ, ಬೋಧಕ ವೃಂದದ ಸದಸ್ಯರಿಗೆ ಮತ್ತು ಇತರರಿಗೆ ನಿರ್ದಿಷ್ಟ ಶೈಕ್ಷಣಿಕ ಮತ್ತು ಸಂಶೋಧನಾ ಕಾರ್ಯಕ್ರಮಗಳನ್ನು, ತರಬೇತಿ ಕಾರ್ಯಕ್ರಮಗಳನ್ನು ಮತ್ತು ವಿನಿಮಯ ಕಾರ್ಯಕ್ರಮಗಳನ್ನು ಏರ್ಪಡಿಸುವುದಕ್ಕಾಗಿ ಇತರ ಯಾವುದೇ ವಿಶ್ವವಿದ್ಯಾಲಯಗಳು, ಸಂಶೋಧನಾ ಸಂಸ್ಥೆಗಳು, ಲಾಭದ ಉದ್ದೇಶವಿಲ್ಲದ ಸಂಸ್ಥೆಗಳು, ಕೈಗಾರಿಕಾ ಸಂಸ್ಥೆಗಳು, ವೃತ್ತಿಪರ ಸಂಸ್ಥೆಗಳು ಅಥವಾ ಇತರ ಸಂಸ್ಥೆಗಳೊಂದಿಗೆ ಸಹಯೋಗವನ್ನು ಹೊಂದುವುದು;

(iii) ರಾಜ್ಯ ಸರ್ಕಾರದ ಪೂರ್ವ ಅನುಮತಿಯೊಡನೆ, ಯಾವುದೇ ಸಂಸ್ಥೆಯೊಂದಿಗೆ ಸಹಯೋಗ ಪಡೆದುಕೊಂಡು ಸಂಶೋಧನೆಯನ್ನು ನಡೆಸುವುದು ಮತ್ತು ಹೊಸದನ್ನು ಬೆಳಕಿಗೆ ತರುವುದು;

(iv) ತಾನು ಸೂಕ್ತವೆಂದು ಭಾವಿಸಬಹುದಾದಂತೆ, ಕಲಿಕೆಯ ಅಂಥ ಶಾಖೆಗಳಲ್ಲಿ ಬೋಧನಾ ಮತ್ತು ಸಂಶೋಧನಾ ಸೌಲಭ್ಯಗಳನ್ನು ಒದಗಿಸಿ ಜ್ಞಾನ ಪ್ರಸಾರ ಮಾಡುವುದು ಮತ್ತು ಅದನ್ನು ಮುಂದುವರೆಸುವುದು ಹಾಗೂ ವಿಶೇಷವಾಗಿ, ತಾಂತ್ರಿಕ, ಆರೋಗ್ಯ, ವ್ಯವಸ್ಥಾಪನೆ, ಜೀವನ ವಿಜ್ಞಾನದಲ್ಲಿ ಮತ್ತು ವಿಶ್ವವಿದ್ಯಾಲಯದ ಇತರ ಅಂಥ ಉನ್ನತ ಶಿಕ್ಷಣ ಕಾರ್ಯಕ್ರಮಗಳಲ್ಲಿ ಸಮಗ್ರ ವ್ಯಾಸಂಗ ವಿಷಯಗಳಿಗಾಗಿ ವಿಶೇಷ ಉಪಬಂಧವನ್ನು ಕಲ್ಪಿಸುವುದು ಮತ್ತು ಅಂತರವಿದ್ಯಾವಿಷಯಗಳ ಅಧ್ಯಯನ ಮತ್ತು ಸಂಶೋಧನೆಗೆ ಉತ್ತೇಜನ ನೀಡುವುದಕ್ಕಾಗಿ ಸೂಕ್ತ ಕ್ರಮ ಕೈಗೊಳ್ಳುವುದು;

(v) ಇಂಜಿನಿಯರಿಂಗ್ ವಿಶ್ಲೇಷಣೆಗೆ (ಸೊಲ್ಯೂಷನ್) ಶಿಕ್ಷಣ ನೀಡುವುದಕ್ಕಾಗಿ ಮತ್ತು ತಾಂತ್ರಿಕ ವ್ಯವಹಾರ ಮತ್ತು ತಾಂತ್ರಿಕ ಪರಿಪಕ್ವತೆಗೆ ಬೆಂಬಲ ನೀಡುವುದಕ್ಕಾಗಿ, ಭವಿಷತ್ತಿನಲ್ಲಿ ಸಮರ್ಥ ತಾಂತ್ರಿಕ ವಿಷಯಗಳಲ್ಲಿ ಸಂಶೋಧನೆ ಕೈಗೊಳ್ಳುವ ಉನ್ನತ ಮಟ್ಟದ ತಾಂತ್ರಿಕ ಹಾಗೂ ವೃತ್ತಿಪರ ಕೈಗಾರಿಕೆಗಳ ಬೇಡಿಕೆಗಳನ್ನು ಪೂರೈಸುವುದಕ್ಕಾಗಿ ಮಾನವ ಸಂಪನ್ಮೂಲಗಳನ್ನು ಅಭಿವೃದ್ಧಿಪಡಿಸುವುದು;

(vi) ಉನ್ನತ ಕಲಿಕೆಗೆ ಪ್ರವೇಶಾವಕಾಶಗಳಿಗೆ ಮತ್ತು ಸಮಾನತೆಗೆ ಉತ್ತೇಜನ ನೀಡುವ ದೃಷ್ಟಿಯಿಂದ, ಕಲಿಕೆಯ ವಿಧಾನಗಳು ಮತ್ತು ಸ್ಥಳಗಳು, ವ್ಯಾಸಂಗ ಕ್ರಮಗಳ ಸಂಯೋಜನೆ, ದಾಖಲಾತಿಗಾಗಿ ಅರ್ಹತೆ, ಪ್ರವೇಶದ ವಯಸ್ಸು, ಪರೀಕ್ಷೆಯನ್ನು ನಡೆಸುವುದು ಮತ್ತು ಕಾರ್ಯಕ್ರಮಗಳ ನಿರ್ವಹಣೆಗೆ ಸಂಬಂಧಿಸಿದಂತೆ ನಮ್ಯವಾದ (ಫ್ಲೆಕ್ಸಿಬಲ್) ಮತ್ತು ಮುಕ್ತವಾದ, ವಿಶ್ವವಿದ್ಯಾಲಯ ಮಟ್ಟದ ಶಿಕ್ಷಣದ ಅನ್ವೇಷಣಾ ಪದ್ಧತಿಯನ್ನು ಅಳವಡಿಸುವುದು ಹಾಗೂ ಜ್ಞಾನದ ಹೊಸ ಕ್ಷೇತ್ರಗಳಲ್ಲಿ ಉತ್ಕೃಷ್ಟತೆಗೆ ಪ್ರೋತ್ಸಾಹಿಸುವುದು, ಶೈಕ್ಷಣಿಕ ಮತ್ತು ಸಮನ್ವಯ ಕಲಿಕೆ, ಇವೆರಡಕ್ಕೂ ಸಮನಾದ ಪ್ರಾಮುಖ್ಯತೆಯನ್ನು ನೀಡುವುದು;

(vii) ಗುಣಮಟ್ಟದ ಶಿಕ್ಷಣವನ್ನು ನೀಡುವುದಕ್ಕಾಗಿ ಸರ್ಕಾರದ ಪೂರ್ವಾನುಮೋದನೆಯೊಡನೆ ಸಂಶೋಧನಾ ಕೇಂದ್ರಗಳನ್ನು ಅಭಿವೃದ್ಧಿ ಪಡಿಸುವುದು;

(viii) ಸರ್ಕಾರದ ಪೂರ್ವಾನುಮೋದನೆಯೊಂದಿಗೆ, ಕರ್ನಾಟಕದಲ್ಲಿನ ವಿವಿಧ ಸ್ಥಳಗಳಲ್ಲಿ ಕ್ಯಾಂಪಸ್ಸುಗಳನ್ನು, ಪ್ರಾದೇಶಿಕ ಕೇಂದ್ರಗಳನ್ನು, ಅಧ್ಯಯನ ಕೇಂದ್ರಗಳನ್ನು ಮತ್ತು ಘಟಕ ಕಾಲೇಜುಗಳನ್ನು ಸ್ಥಾಪಿಸುವುದು ಮತ್ತು ತಾಂತ್ರಿಕ, ವೃತ್ತಿಪರ, ಸಾಮಾನ್ಯ ಶಿಕ್ಷಣ ಮತ್ತು ಸಾಮಾಜಿಕ ಹಾಗೂ ಮಾನವ ಅಭಿವೃದ್ಧಿಯಲ್ಲಿಯ ಶೈಕ್ಷಣಿಕ ಬದಲಾವಣೆಗಳ ಬಗ್ಗೆ ಅರಿವನ್ನುಂಟು ಮಾಡುವುದು ಮತ್ತು ಆ ಬಗ್ಗೆ ಕೊಡುಗೆಯನ್ನು ನೀಡುವುದು.

(ix) ನಿರ್ಧರಣೆಯ ವಿವಿಧ ಆಧುನಿಕ ವಿಧಾನಗಳ ಮೂಲಕ ಮಾಡಿದ ಮೌಲ್ಯಮಾಪನಕ್ಕೆ ಅನುಸಾರವಾಗಿ ಯಶಸ್ವಿಯಾಗಿ ಪೂರ್ಣಗೊಳಿಸಿದುದರ ಆಧಾರದ ಮೇಲೆ ಪದವಿಗಳನ್ನು, ಡಿಪ್ಲೋಮೋಗಳನ್ನು, ಪ್ರಮಾಣಪತ್ರಗಳನ್ನು ಮತ್ತು ಯಶೋಪತ್ರ ಪ್ರದಾನದಂಥ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(x) ವಿಚಾರ ಸಂಕೀರ್ಣಗಳು, ಸಮ್ಮೇಳನಗಳು, ಕಾರ್ಯಾಗಂಗ ಶಿಕ್ಷಣ ಕಾರ್ಯಕ್ರಮಗಳು, ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳು, ಪ್ರಕಟಣೆಗಳು ಮತ್ತು ತರಬೇತಿ ಕಾರ್ಯಕ್ರಮಗಳು ಮತ್ತು ಕಾರ್ಯಸೂಚಿಗಳ ಮೂಲಕ ಜ್ಞಾನ ಪ್ರಸಾರ ಮಾಡುವುದು ಮತ್ತು ಶಿಕ್ಷಣ ಮತ್ತು ತತ್ಸಂಬಂಧಿತ ಅಭಿವೃದ್ಧಿ ಕ್ಷೇತ್ರಗಳ ವಿಷಯಗಳ ಬಗ್ಗೆ ಸಾರ್ವಜನಿಕ ಚರ್ಚೆಯನ್ನು ಏರ್ಪಡಿಸುವುದು;

(xi) ಉತ್ತಮ ಗುಣಮಟ್ಟದ ಇತರ ಯಾವುವೇ ವಿಶ್ವವಿದ್ಯಾಲಯಗಳೊಂದಿಗೆ ಸಹಭಾಗಿಗಳಾಗಿ ವಿಶ್ವವಿದ್ಯಾಲಯದ ಬೋಧಕ ವೃಂದ (ಫ್ಯಾಕಲ್ಟಿ) ಮತ್ತು ಸಂಶೋಧಕರ ಅಭಿವೃದ್ಧಿ ಮತ್ತು ತರಬೇತಿಗಾಗಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು;

(xii) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದಕ್ಕಾಗಿ ಮತ್ತು ಉತ್ತೇಜಿಸುವುದಕ್ಕಾಗಿ ಅವಶ್ಯಕವಾದ ಮತ್ತು ಯುಕ್ತವಾದ ಕ್ರಮಗಳನ್ನು ಕೈಗೊಳ್ಳುವುದು;

(xiii) ಭಾರತದಲ್ಲಿ ಶಿಕ್ಷಣ ಮತ್ತು ಇತರ ಅಭಿವೃದ್ಧಿ ವಲಯಗಳನ್ನು ವಿಸ್ತರಿಸುವುದಕ್ಕಾಗಿ ಸರ್ಕಾರವು ಅನುಮೋದಿಸಬಹುದಾದಂತೆ ಯಾವುವೇ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದು.

**8. ವಿಶ್ವವಿದ್ಯಾಲಯದ ಅಧಿಕಾರಗಳು.–** ವಿಶ್ವವಿದ್ಯಾಲಯವು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗೆ ಅನುಸಾರವಾಗಿ ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿರ್ಧರಿಸಬಹುದಾದ ಅಂಥ ಕ್ಯಾಂಪಸ್ಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಕರ್ನಾಟಕದಲ್ಲಿ ಸ್ಥಾಪಿಸುವುದು ಮತ್ತು ನಿರ್ವಹಿಸುವುದು;

(ii) ವಿಶ್ವವಿದ್ಯಾಲಯದ ಉದ್ದೇಶವನ್ನು ಕಾರ್ಯರೂಪಕ್ಕೆ ತರುವಲ್ಲಿ ಅಗತ್ಯವಾಗಬಹುದಾದ ಅಥವಾ ಕಾರ್ಯಸಾಧ್ಯವಾಗಬಹುದಾದ ಎಲ್ಲಾ ಅಂಥ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು;

(iii) ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಮತ್ತು ಷರತ್ತುಗಳಿಗೊಳಪಟ್ಟು ಪದವಿಗಳು ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರದಾನಮಾಡುವುದು;

(iv) ಪರಿನಿಯಮಗಳನ್ವಯ ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿ ವೇತನಗಳು ಮತ್ತು ಬಹುಮಾನಗಳು, ಅವಾರ್ಡುಗಳು, ಪಾರಿತೋಷಕಗಳು ಇತ್ಯಾದಿಗಳನ್ನು ಸ್ಥಾಪಿಸುವುದು ಮತ್ತು ನೀಡುವುದು;

(v) ಸಂದರ್ಭಾನುಸಾರ ಪರಿನಿಯಮಗಳಲ್ಲಿ ಅಥವಾ ನಿಯಮಗಳಲ್ಲಿ ನಿಗದಿಪಡಿಸಬಹುದಾದ ಅಂಥ ಶುಲ್ಕಗಳು, ಬಿಲ್ಲುಗಳು, ಖರೀದಿ ಪಟ್ಟಿಗಳನ್ನು ಕೇಳಿಪಡೆದುಕೊಳ್ಳುವುದು ಮತ್ತು ಸ್ವೀಕರಿಸುವುದು ಹಾಗೂ ಚಾರ್ಜುಗಳನ್ನು ವಸೂಲು ಮಾಡುವುದು;

(vi) ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಪಠ್ಯೇತರ ಚಟುವಟಿಕೆಗಳಿಗೆ ಅವಕಾಶಗಳನ್ನು ಕಲ್ಪಿಸುವುದು;

(vii) ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಕ್ಯಾಂಪಸುಗಳ, ಪ್ರಾದೇಶಿಕ ಕೇಂದ್ರಗಳ, ಅಧ್ಯಯನ ಕೇಂದ್ರಗಳ ಫ್ಯಾಕಲ್ಟಿ, ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವುದು;

(viii) ವಿಶ್ವವಿದ್ಯಾಲಯದ ಅಥವಾ ಒಂದು ಘಟಕ ಕಾಲೇಜಿನ ಅಥವಾ ಕ್ಯಾಂಪಸ್ಸಿನ, ಪ್ರಾದೇಶಿಕ ಕೇಂದ್ರ, ಅಧ್ಯಯನ ಕೇಂದ್ರದ ಉದ್ದೇಶಕ್ಕಾಗಿ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದಿರುವ, ಯಾವುದೇ ರೀತಿಯ ಸ್ವಯಂ ದೇಣಿಗೆಗಳು ಮತ್ತು ಕೊಡುಗೆಗಳನ್ನು ಸ್ವೀಕರಿಸುವುದು ಮತ್ತು ನ್ಯಾಸ ಮತ್ತು ದತ್ತಿ ಸ್ವತ್ತುಗಳೂ ಸೇರಿದಂತೆ, ಯಾವುದೇ ಚರ ಅಥವಾ ಸ್ಥಿರ ಸ್ವತ್ತನ್ನು ಅರ್ಜಿಸುವುದು, ಹೊಂದಿರುವುದು, ನಿರ್ವಹಿಸುವುದು, ನಡೆಸುವುದು ಮತ್ತು ಹಸ್ತಾಂತರ ಮಾಡುವುದು;

(ix) ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸಿಕೊಂಡು ಬರುವುದು ಹಾಗೂ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ ವಿದ್ಯಾರ್ಥಿಗಳಿಗೆ ವಸತಿ ಸ್ಥಳಗಳಾಗಿ ಮಾನ್ಯತೆ ನೀಡುವುದು;

(x) ವಸತಿಯ ಮೇಲ್ವಿಚಾರಣೆ ಮಾಡುವುದು ಮತ್ತು ನಿಯಂತ್ರಣ ಮಾಡುವುದು ಹಾಗೂ ವಿದ್ಯಾರ್ಥಿಗಳು ಮತ್ತು ಎಲ್ಲಾ ಪ್ರವರ್ಗಗಳ ಸಿಬ್ಬಂದಿಗಳಲ್ಲಿ ಶಿಸ್ತು ನಿಯಂತ್ರಣ ಮಾಡುವುದು ಮತ್ತು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ನಡತೆ ಸಂಹಿತೆಯನ್ನು ರೂಪಿಸುವುದೂ ಒಳಗೊಂಡಂತೆ, ಅಂಥ ಸಿಬ್ಬಂದಿಗಳ ಸೇವಾಷರತ್ತುಗಳನ್ನು ನಿರೂಪಿಸುವುದು;

(xi) ಶೈಕ್ಷಣಿಕ, ಆಡಳಿತಾತ್ಮಕ ಮತ್ತು ಬೆಂಬಲ ಸಿಬ್ಬಂದಿಯ ಹುದ್ದೆಗಳನ್ನು ಮತ್ತು ಇತರ ಅವಶ್ಯ ಹುದ್ದೆಗಳನ್ನು ಸೃಜಿಸುವುದು;

(xii) ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ಉದ್ದೇಶಗಳಿಗಾಗಿ ಇತರ ವಿಶ್ವವಿದ್ಯಾಲಯಗಳೊಡನೆ ಸಹಕರಿಸುವುದು ಮತ್ತು ಸಹಯೋಗ ಹೊಂದುವುದು;

(xiii) ಶಿಕ್ಷಕರಿಗೆ, ಪಾಠಗಳನ್ನು ರಚಿಸುವವರಿಗೆ, ಮೌಲ್ಯಮಾಪಕರಿಗೆ ಮತ್ತಿತರ ಶೈಕ್ಷಣಿಕ ಸಿಬ್ಬಂದಿಗೆ ಪುನರ್ಮನನ ವ್ಯಾಸಂಗ ಕ್ರಮಗಳು, ಅಭಿಮುಖ ವ್ಯಾಸಂಗ ಕ್ರಮಗಳು, ಕಾರ್ಯಾಗಾರಗಳು, ವಿಚಾರಗೋಷ್ಠಿಗಳು ಮತ್ತಿತರ ಕಾರ್ಯಕ್ರಮಗಳನ್ನು ಏರ್ಪಡಿಸುವುದು ಮತ್ತು ನಡೆಸುವುದು;

(xiv) ಶೈಕ್ಷಣಿಕ ಪರಿಷತ್ತಿನ ಅನುಮೋದನೆಯೊಂದಿಗೆ ವಿಶ್ವವಿದ್ಯಾಲಯಕ್ಕೆ ಅಥವಾ ಘಟಕ ಕಾಲೇಜಿಗೆ, ಪ್ರಾದೇಶಿಕ ಕೇಂದ್ರಗಳಿಗೆ, ಅಧ್ಯಯನ ಕೇಂದ್ರಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮತ್ತು ಈ ಅಧಿನಿಯಮದಲ್ಲಿ ಕಲ್ಪಿಸಿದ ವ್ಯಾಪ್ತಿಗಿಂತ ಕಡಿಮೆಯಿಲ್ಲದಂತೆ ಕರ್ನಾಟಕದ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮಾನಕ ಗುಣಮಟ್ಟಗಳನ್ನು ನಿರ್ಧರಿಸುವುದು;

(xv) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಕಾರ್ಯರೂಪಕ್ಕೆ ತರಲು ಅವಶ್ಯವಾಗಬಹುದಾದಂಥ ಇತರ ಎಲ್ಲಾ ಕ್ರಮಗಳನ್ನು ಅಥವಾ ಕಾರ್ಯಗಳನ್ನು, ಅವು ಮೇಲೆ ಹೇಳಿದ ಅಧಿಕಾರಗಳಿಗೆ ಪ್ರಾಸಂಗಿಕವಾಗಿರಲಿ ಅಥವಾ ಇಲ್ಲದಿರಲಿ, ಕೈಗೊಳ್ಳುವುದು;

(xvi) ಪರೀಕ್ಷೆಗಳ ಆಧಾರದ ಮೇಲೆ ಅಥವಾ ಸರ್ಕಾರದಿಂದ ಅನುಮೋದಿತವಾದ ಇತರ ಯಾವುದೇ ಮೌಲ್ಯಮಾಪನ ವಿಧಾನದ ಆಧಾರದ ಮೇಲೆ ನೀಡಲು ಪದವಿಗಳು, ಡಿಪ್ಲೋಮಾಗಳು, ಪ್ರಮಾಣಪತ್ರಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಸ್ಥಾಪಿಸುವುದು;

(xvii) ಫಿಲಂಗಳು, ಕ್ಯಾಸೆಟ್‌ಗಳು, ಧ್ವನಿಸುರುಳಿಗಳು, ದೃಶ್ಯಸುರುಳಿಗಳು, ಸಿ.ಡಿ., ವಿ.ಸಿ.ಡಿ. ಮತ್ತು ಇತರ ತಂತ್ರಾಂಶಗಳೂ ಹಾಗೂ ಇತರ ಸಂಬಂಧಿತ ವಿದ್ಯುನ್ಮಾನ ಮತ್ತು ಮುದ್ರಣ ಮಾಧ್ಯಮ ಸೇರಿದಂತೆ ಬೋಧಕ ಸಾಮಗ್ರಿಗಳನ್ನು ತಯಾರಿಸುವುದಕ್ಕಾಗಿ ಅವಕಾಶ ಕಲ್ಪಿಸುವುದು;

(xviii) ಪ್ರಬಂಧಕ ಮಂಡಳಿಯ ಅನುಮೋದನೆಯೊಡನೆ ವಿಶ್ವವಿದ್ಯಾಲಯದ ಉದ್ದೇಶಗಳಿಗಾಗಿ ವಿಶ್ವವಿದ್ಯಾಲಯದ ಸ್ವತ್ತುಗಳನ್ನು ಭದ್ರತೆಯಾಗಿ ನೀಡಿ ಅಥವಾ ನೀಡದೆ ಹಣವನ್ನು ಪಡೆಯುವುದು, ಸಂಗ್ರಹಿಸುವುದು, ಚಂದಾದಾರರಾಗುವುದು ಮತ್ತು ಸಾಲ ಪಡೆಯುವುದು;

(xix) ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುದೇ ಇತರ ಶೈಕ್ಷಣಿಕ ಸಂಸ್ಥೆಗಳ ಆಡಳಿತವನ್ನು ವಶಪಡಿಸಿಕೊಳ್ಳುವುದು, ವಹಿಸಿಕೊಳ್ಳುವುದು ಮತ್ತು ನಡೆಸುವುದು;

(xx) ವ್ಯವಸ್ಥಾಪನಾ ಮಂಡಳಿಯ ಪೂರ್ವಾನುಮೋದನೆಯೊಂದಿಗೆ ಸ್ಥಿರ ಸ್ವತ್ತುಗಳನ್ನು ಅರ್ಜಿಸುವುದು;

(xxi) ವಿಶ್ವವಿದ್ಯಾಲಯದ ಮೇಲಿನ ಉದ್ದೇಶಗಳಿಗೆ ಸಂಬಂಧಿಸಿದ ಅಥವಾ ಪ್ರಾಸಂಗಿಕವಾದ ಯಾವುದೇ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು.

**9. ವಿಶ್ವವಿದ್ಯಾಲಯವು ಎಲ್ಲಾ ವರ್ಗ, ಜಾತಿ, ಮತ ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲರಿಗೂ ಮುಕ್ತವಾಗಿರತಕ್ಕದ್ದು.–** ವಿಶ್ವವಿದ್ಯಾಲಯದ ಪ್ರವೇಶಗಳು ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲಾ ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು. ಎಲ್ಲಾ ಪ್ರವೇಶಗಳನ್ನು ಅರ್ಹತಾ ಪರೀಕ್ಷೆಗಳಲ್ಲಿನ ಅರ್ಹತೆಯ ಆಧಾರದ ಮೇಲೆ ಮಾಡತಕ್ಕದ್ದು:

ಪರಂತು, ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳ ಪ್ರವೇಶದಲ್ಲಿ ಶೇಕಡಾ ನಲವತ್ತರಷ್ಟನ್ನು ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ಮೀಸಲಿಡತಕ್ಕದ್ದು ಮತ್ತು ಪ್ರವೇಶಗಳನ್ನು ರಾಜ್ಯ ಸರ್ಕಾರವು ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡತಕ್ಕದ್ದು ಮತ್ತು ಸೀಟುಗಳನ್ನು ಅರ್ಹತ ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ರೂಪಿಸುವ ಮೀಸಲಾತಿ ನೀತಿಗೆ ಅನುಸಾರವಾಗಿ ಹಂಚಿಕೆ ಮಾಡತಕ್ಕದ್ದು:

ಮತ್ತು ಪರಂತು, ಯಾವುದೇ ಕೋರ್ಸಿನಲ್ಲಿ ಹತ್ತಕ್ಕಿಂತ ಕಡಿಮೆ ಸೀಟುಗಳು ಇರುವಲ್ಲಿ, ಸ್ನಾತಕೋತ್ತರ, ಇಂಥ ಕೋರ್ಸುಗಳನ್ನು ಒಟ್ಟಿಗೆ ಒಂದುಗೂಡಿಸುವ ಮೂಲಕ ಮೀಸಲಿಡತಕ್ಕದ್ದು ಮತ್ತು ಯಾವುದೇ ಕೋರ್ಸಿನಲ್ಲಿ ಮೂರು ಸೀಟುಗಳಿಗಿಂತ ಕಡಿಮೆ ಇರುವಲ್ಲಿ, ಅವುಗಳನ್ನು ಸರದಿ ಸುತ್ತಿನಲ್ಲಿ ಮೀಸಲಿಡತಕ್ಕದ್ದು.

**10. ರಾಷ್ಟ್ರೀಯ ಅಧಿಮಾನ್ಯತೆ.–** ವಿಶ್ವವಿದ್ಯಾಲಯವು ಪ್ರಾರಂಭವಾದ ತರುವಾಯ ಆದಷ್ಟು ಬೇಗನೆ ಸಂಬಂಧಪಟ್ಟ ಶಾಸನಾತ್ಮಕ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳಿಂದ ಅಧಿಮಾನ್ಯತೆಯನ್ನು ಕೋರತಕ್ಕದ್ದು ಮತ್ತು ಖಾಸಗಿ ವಿಶ್ವವಿದ್ಯಾಲಯಗಳು ನಡೆಸುವ ಎಲ್ಲಾ ವ್ಯಾಸಂಗ ಕ್ರಮಗಳು ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ವಿನಿಯಮಗಳಿಗೆ ಅನುಸಾರವಾಗಿ ಇರತಕ್ಕದ್ದು.

**11. ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು.–** ಪ್ರಾಯೋಜಕ ಸಂಸ್ಥೆಯು ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದಂತೆ ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಇವುಗಳಲ್ಲಿ ಪ್ರತಿಯೊಂದನ್ನು ಪ್ರಾಯೋಜಕ ಸಂಸ್ಥೆಯು ತನ್ನ ವಿವೇಚನಾನುಸಾರ ಚಲಾಯಿಸಬಹುದು, ಎಂದರೆ:–

(i) ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಪುನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(ii) ವಿಶ್ವವಿದ್ಯಾಲಯದ ಪ್ರಥಮ ಪ್ರಬಂಧಕ ಮಂಡಳಿಯನ್ನು ರಚಿಸುವುದು;

(iii) ಪ್ರಬಂಧಕ ಮಂಡಳಿಯ ಅಧ್ಯಕ್ಷರನ್ನು ನಾಮನಿರ್ದೇಶಿಸುವುದು;

(iv) ಪ್ರಬಂಧಕ ಮಂಡಳಿಯ ಸದಸ್ಯರಾಗಿ ಮೂರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(v) ವ್ಯವಸ್ಥಾಪನಾ ಮಂಡಳಿಯ ಸದಸ್ಯರಾಗಿ ಇಬ್ಬರು ವ್ಯಕ್ತಿಗಳನ್ನು ನಾಮ ನಿರ್ದೇಶಿಸುವುದು;

(vi) ವಿಶ್ವವಿದ್ಯಾಲಯದ ದತ್ತಿ ನಿಧಿಗೆ ದೇಣಿಗೆ ನೀಡಲು ನಿಧಿ ಮೂಲಗಳನ್ನು ನಿರ್ಧರಿಸುವುದು;

(vii) ವಿಶ್ವವಿದ್ಯಾಲಯದ ಹಣದ ವಿನಿಯೋಗ ಮತ್ತು ವೆಚ್ಚ ಮಾಡುವುದನ್ನು ನಿರ್ಧರಿಸುವುದು;

(viii) ಈ ಅಧಿನಿಯಮದಲ್ಲಿ ಉಪಬಂಧಿಸಿರುವ ವಿಧಾನದಲ್ಲಿ ಪ್ರಬಂಧಕ ಮಂಡಳಿಯ ಸಭೆಯಲ್ಲಿಯ ವಿವಾದಗಳನ್ನು ಬಗೆಹರಿಸುವುದು;

## ಅಧ್ಯಾಯ – III

## ವಿಶ್ವವಿದ್ಯಾಲಯದ ಅಧಿಕಾರಿಗಳು

**12. ವಿಶ್ವವಿದ್ಯಾಲಯದ ಅಧಿಕಾರಿಗಳು.–** ಈ ಮುಂದಿನವರು ವಿಶ್ವವಿದ್ಯಾಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:–

(i) ಸಂದರ್ಶಕರು;

(ii) ಸಹ–ಸಂದರ್ಶಕರು;

(iii) ಕುಲಾಧಿಪತಿಗಳು;

5

(iv) ಕುಲಪತಿಗಳು;

(v) ಸಹಕುಲಪತಿಗಳು;

(vi) ಕುಲಸಚಿವರು;

(vii) ಹಣಕಾಸು ಅಧಿಕಾರಿ; ಮತ್ತು

(viii) ಪರಿನಿಯಮಗಳ ಮೂಲಕ ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಘೋಷಿಸಬಹುದಾದಂಥ ಇತರ ಅಧಿಕಾರಿಗಳು.

**13. ಸಂದರ್ಶಕರು.–** (1) ಕರ್ನಾಟಕದ ಘನತೆವೆತ್ತ ರಾಜ್ಯಪಾಲರು ವಿಶ್ವವಿದ್ಯಾಲಯದ ಸಂದರ್ಶಕರಾಗಿರತಕ್ಕದ್ದು ಮತ್ತು ಸಂದರ್ಶಕರು ವಿಶ್ವವಿದ್ಯಾಲಯದ ಕಾರ್ಯನಿರ್ವಹಣೆಯ ಸುಧಾರಣೆಗಾಗಿ ಸಲಹೆಗಳನ್ನು ನೀಡಬಹುದು.

(2) ಸಂದರ್ಶಕರು, ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಸಂದರ್ಶಕರು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ವ್ಯವಹಾರಗಳಿಗೆ ಸಂಬಂಧಿಸಿದಂತೆ, ಯಾವುದೇ ಪತ್ರ ಅಥವಾ ಮಾಹಿತಿಯನ್ನು ತರಿಸಿಕೊಳ್ಳುವುದು.

(ii) ಸಂದರ್ಶಕರು, ಅವರು ಸ್ವೀಕರಿಸಿದ ಮಾಹಿತಿಯ ಆಧಾರದ ಮೇಲೆ ವಿಶ್ವವಿದ್ಯಾಲಯಗಳ ಯಾವುದೇ ಪ್ರಾಧಿಕಾರವು ಮಾಡಿದ ಯಾವುದೇ ಆದೇಶ, ನಡೆಸಿದ ವ್ಯವಹರಣೆಗಳು ಅಥವಾ ಕೈಗೊಂಡ ತೀರ್ಮಾನಗಳು, ಈ ಅಧಿನಿಯಮ, ವಿನಿಯಮಗಳು ಅಥವಾ ನಿಯಮಗಳಿಗೆ ಪೂರಕವಾಗಿಲ್ಲವೆಂದು ಮನಗಂಡರೆ ಅವರು ವಿಶ್ವವಿದ್ಯಾಲಯದ ಹಿತಾಸಕ್ತಿಯಿಂದ ತಾವು ಸೂಕ್ತವೆಂದು ಭಾವಿಸಬಹುದಾದಂಥ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಹಾಗೆ ಹೊರಡಿಸಿದ ನಿರ್ದೇಶನಗಳನ್ನು ಸಂಬಂಧಪಟ್ಟವರೆಲ್ಲರೂ ಪಾಲಿಸತಕ್ಕದ್ದು.

**14. ಸಹ–ಸಂದರ್ಶಕರು.–** (1) ಕರ್ನಾಟಕ ಸರ್ಕಾರದ ಮಾನ್ಯ ಉನ್ನತ ಶಿಕ್ಷಣ ಸಚಿವರು ವಿಶ್ವವಿದ್ಯಾಲಯದ ಸಹ–ಸಂದರ್ಶಕರಾಗಿರತಕ್ಕದ್ದು.

(2) ಸಂದರ್ಶಕರ ಅನುಪಸ್ಥಿತಿಯಲ್ಲಿ ಸಹ–ಸಂದರ್ಶಕರು ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**15. ಕುಲಾಧಿಪತಿಗಳು.–** (1) ಕುಲಾಧಿಪತಿಯವರನ್ನು ಪ್ರಾಯೋಜಕ ಸಂಸ್ಥೆಯು ನೇಮಿಸತಕ್ಕದ್ದು.

(2) ಪ್ರಾಯೋಜಕ ಸಂಸ್ಥೆಯ ಸಂಸ್ಥಾಪಿತ ನ್ಯಾಸಧಾರಿಯು ಮೊದಲನೇ ಕುಲಾಧಿಪತಿಗಳಾಗಿರತಕ್ಕದ್ದು, ಅವರು ತಮ್ಮ ಜೀವನಪರ್ಯಂತ ಅಥವಾ ಅವರು ತಮ್ಮ ಪದವನ್ನು ಬಿಟ್ಟುಕೊಡುವವರೆಗೆ ಕುಲಾಧಿಪತಿಗಳಾಗಿ ಪದಧಾರಣ ಮಾಡಿರತಕ್ಕದ್ದು.

(3) ತದನಂತರದ ಕುಲಾಧಿಪತಿಗಳು, ಅಂಥ ನೇಮಕಾತಿಯನ್ನು ಪರಿಗಣಿಸುವ ಸಂದರ್ಭದಲ್ಲಿ ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ, ಪ್ರಾಯೋಜಕ ಸಂಸ್ಥೆಯ ನ್ಯಾಸಧಾರಿಯಾಗಿರತಕ್ಕದ್ದು ಅಥವಾ ಶಿಕ್ಷಣ, ವಿಜ್ಞಾನ, ಸಂಸ್ಕೃತಿ ಅಥವಾ ಸಾರ್ವಜನಿಕ ಜೀವನ ಕ್ಷೇತ್ರಗಳಲ್ಲಿ ರಾಷ್ಟ್ರೀಯ ಮಟ್ಟದ ಛಾಪನ್ನು ಪಡೆದಿರುವ ಅಂಥ ಇತರ ವ್ಯಕ್ತಿಯಾಗಿರತಕ್ಕದ್ದು.

(4) ಹಾಗೆ ನೇಮಕಗೊಂಡ ತದನಂತರದ ಕುಲಾಧಿಪತಿಗಳು ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ಪದಧಾರಣ ಮಾಡತಕ್ಕದ್ದು.

(5) ಕುಲಾಧಿಪತಿಗಳು ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳ ಅಡಿಯಲ್ಲಿ ಅವರಿಗೆ ಪ್ರದಾನ ಮಾಡಬಹುದಾದಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು, ಅವುಗಳಲ್ಲಿ ಈ ಮುಂದಿನ ಅಧಿಕಾರಗಳು ಒಳಗೊಂಡಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುವುದು;

(ii) ಸಂದರ್ಶಕರ ಮತ್ತು ಸಹ–ಸಂದರ್ಶಕರಿಬ್ಬರ ಗೈರುಹಾಜರಿಯಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಘಟಿಕೋತ್ಸವಗಳಲ್ಲಿ ಅಧ್ಯಕ್ಷತೆಯನ್ನು ವಹಿಸುವುದು;

(iii) ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವುದು;

(iv) ಈ ಅಧಿನಿಯಮ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಅನುಸಾರವಾಗಿ ಕುಲಪತಿಗಳನ್ನು ನೇಮಿಸುವುದು ಅಥವಾ ಪುನರ್ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(v) ಈ ಅಧಿನಿಯಮದ 16ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ನಾಮನಿರ್ದೇಶಕ ಸಮಿತಿಯ ಸದಸ್ಯರಾಗಿ ಒಬ್ಬ ವ್ಯಕ್ತಿಯನ್ನು ನಾಮನಿರ್ದೇಶನ ಮಾಡುವುದು;

(vi) ಸಹಕುಲಪತಿಗಳು, ಡೀನ್, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿಗಳ ನೇಮಕಾತಿಯನ್ನು ಅನುಮೋದಿಸುವುದು;

(vii) ಪ್ರಬಂಧಕ ಮಂಡಳಿಯ ಸದಸ್ಯರನ್ನಾಗಿ ಇಬ್ಬರು ಶಿಕ್ಷಣ ತಜ್ಞರನ್ನು ನಾಮನಿರ್ದೇಶಿಸುವುದು;

(viii) ಮೊದಲ ಸಹಕುಲಪತಿಗಳು ಮತ್ತು ಹಣಕಾಸು ಅಧಿಕಾರಿಗಳನ್ನು ನೇಮಿಸುವುದು;

(ix) ಮೊದಲ ವ್ಯವಸ್ಥಾಪನಾ ಮಂಡಳಿ, ಹಣಕಾಸು ಸಮಿತಿ, ಸಂಶೋಧನಾ ಪರಿಷತ್ತು ಹಾಗೂ ಶೈಕ್ಷಣಿಕ ಪರಿಷತ್ತುಗಳನ್ನು ರಚಿಸುವುದು;

(x) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ ಕಾರ್ಯಸೂಚಿ ವಿಷಯಗಳನ್ನು ಪೂರ್ವಾನುಮೋದಿಸುವುದು;

(xi) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ (ಪ್ರಬಂಧಕ ಮಂಡಳಿಯ ಸಭೆಯಲ್ಲಿ ಉಂಟಾದ ವಿವಾದಗಳನ್ನು ಹೊರತುಪಡಿಸಿ) ವಿವಾದಗಳನ್ನು ಪರಿಹರಿಸುವುದು.

(6) ಪದಾಧಿಕಾರಿ ಅಥವಾ ಸಂಸ್ಥೆ ಮತ್ತು ವಿಶ್ವವಿದ್ಯಾಲಯದ ಯಾವುದೇ ಇತರ ಪದಾಧಿಕಾರಿ ಅಥವಾ ಸಂಸ್ಥೆಗಳ ನಡುವೆ ವಿವಾದಗಳು ಉಂಟಾದಲ್ಲಿ, ಆ ವಿವಾದವನ್ನು ಕುಲಾಧಿಪತಿಯವರ ಪರ್ಯಾಲೋಚನೆಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿವಾದದ ಸಂದರ್ಭದಲ್ಲಿ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**16. ಕುಲಪತಿಗಳು.–** (1) (2)ನೇ ಉಪಪ್ರಕರಣದ ಉಪಬಂಧಗಳಿಗೆ ಅನುಸಾರವಾಗಿ ನಾಮನಿರ್ದೇಶಕ ಸಮಿತಿಯು ಶಿಫಾರಸ್ಸು ಮಾಡಿದ ಮೂರು ವ್ಯಕ್ತಿಗಳ ಪೈಕಿಯಿಂದ ಒಬ್ಬರನ್ನು ಮೂರು ವರ್ಷಗಳ ಅವಧಿಗಾಗಿ ಕುಲಪತಿಗಳನ್ನಾಗಿ, ಪರಿನಿಯಮಗಳಲ್ಲಿ ನಿಯಮಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರು ನೇಮಿಸತಕ್ಕದ್ದು. ಮೂರು ವರ್ಷಗಳ ಅವಧಿಯು ಮುಗಿದ ತರುವಾಯ, ಇದನ್ನು ಮೂರು ವರ್ಷಗಳ ಮತ್ತೊಂದು ಅವಧಿಗೆ ನವೀಕರಿಸಬಹುದು:

ಪರಂತು, ಕುಲಪತಿಯವರು, ತಮ್ಮ ಅವಧಿ ಮುಗಿದ ನಂತರವೂ ಹೊಸ ಕುಲಪತಿಯವರು ಸೇರಿಕೊಳ್ಳುವವರೆಗೆ ಪದದಲ್ಲಿ ಮುಂದುವರೆಯತಕ್ಕದ್ದು. ಆದಾಗ್ಯೂ ಈ ಅವಧಿಯು ಯಾವುದೇ ಸಂದರ್ಭದಲ್ಲಿ ಒಂದು ವರ್ಷವನ್ನು ಮೀರತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಹೇಳಿರುವ ನಾಮನಿರ್ದೇಶಕ ಸಮಿತಿಯಲ್ಲಿ ಈ ಮುಂದಿನ ವ್ಯಕ್ತಿಗಳು ಇರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು ನಾಮನಿರ್ದೇಶಿಸಿದ ಒಬ್ಬ ವ್ಯಕ್ತಿ;

(ii) ಪ್ರಬಂಧಕ ಮಂಡಳಿಯ ಇಬ್ಬರು ನಾಮ ನಿರ್ದೇಶಿತರು, ಇವರಲ್ಲಿ ಒಬ್ಬರನ್ನು ಪ್ರಬಂಧಕ ಮಂಡಳಿಯು ಸಮಿತಿಯ ಸಂಚಾಲಕರೆಂದು ನಾಮನಿರ್ದೇಶಿಸತಕ್ಕದ್ದು.

(3) ನಾಮನಿರ್ದೇಶಕ ಸಮಿತಿಯು, ಅರ್ಹತೆಯ ಆಧಾರದ ಮೇಲೆ ಕುಲಪತಿಯ ಹುದ್ದೆಗೆ ಸೂಕ್ತವಾದ ಮೂರು ವ್ಯಕ್ತಿಗಳ ಹೆಸರನ್ನು ಶಿಫಾರಸ್ಸು ಮಾಡತಕ್ಕದ್ದು ಮತ್ತು ಅದನ್ನು ಪ್ರತಿಯೊಬ್ಬ ವ್ಯಕ್ತಿಯ ವಿದ್ಯಾರ್ಹತೆ ಮತ್ತಿತರ ವಿಶಿಷ್ಟ ಪ್ರಶಸ್ತಿಗಳನ್ನು ತಿಳಿಸುವ ಒಂದು ಸಂಕ್ಷಿಪ್ತ ವರದಿಯೊಂದಿಗೆ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು.

(4) ಕುಲಪತಿಯವರು ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಾಹಕ ಮತ್ತು ಶೈಕ್ಷಣಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣವನ್ನು ಚಲಾಯಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯದ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೊಳಿಸತಕ್ಕದ್ದು:

ಪರಂತು, ಶಿಕ್ಷಕರ ನೇಮಕಾತಿಯನ್ನು ಹೊರತುಪಡಿಸಿ ಕೂಡಲೇ ಕ್ರಮವನ್ನು ಕೈಗೊಳ್ಳಬೇಕಾದ ತುರ್ತು ಸ್ವರೂಪದ ಯಾವುದೇ ಇತರ ವಿಷಯಗಳಲ್ಲಿ ಮತ್ತು ಅದನ್ನು ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ವಿಶ್ವವಿದ್ಯಾಲಯವು ಇದಕ್ಕಾಗಿ ಅಧಿಕೃತಗೊಳಿಸಿದ್ದ ಯಾವೊಬ್ಬ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ಇತರ ಸಂಸ್ಥೆಯು ಕೂಡಲೇ ಕ್ರಮಕೈಗೊಳ್ಳುವುದು ಸಾಧ್ಯವಿರದಿರುವಾಗ ಕುಲಪತಿಯವರು ತಾನು ಸೂಕ್ತವೆಂದು ಭಾವಿಸಬಹುದಾದಂತಹ ಕ್ರಮವನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆದು ಕೈಗೊಳ್ಳತಕ್ಕದ್ದು.

(5) ಕುಲಪತಿಯವರು ಪರಿನಿಯಮಗಳು ಅಥವಾ ನಿಯಮಗಳಲ್ಲಿ ಹೇಳಲಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು:

ಪರಂತು, ಕುಲಪತಿಗಳ ಅಭಿಪ್ರಾಯದಲ್ಲಿ, ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಯಾವುದೇ ನಿರ್ಣಯವು, ಈ ಅಧಿನಿಯಮ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳು, ವಿನಿಯಮಗಳು ಅಥವಾ ನಿಯಮಗಳ ಮೂಲಕ ಪ್ರದತ್ತವಾದ ಅಧಿಕಾರದ ಹೊರಗಿದ್ದರೆ ಅಥವಾ ವಿಶ್ವವಿದ್ಯಾಲಯದ ಹಿತಾಸಕ್ತಿಗೆ ಪ್ರತಿಕೂಲವಾಗಬಹುದಾಗಿದ್ದರೆ, ಅದರ ನಿರ್ಣಯದ ದಿನಾಂಕದಿಂದ ಹದಿನೈದು ದಿನಗಳ ಒಳಗೆ ತನ್ನ ನಿರ್ಣಯವನ್ನು ಪರಿಷ್ಕರಿಸಲು ಸಂಬಂಧಪಟ್ಟ ಪ್ರಾಧಿಕಾರವನ್ನು ಆತನು ಕೋರತಕ್ಕದ್ದು ಮತ್ತು ಪ್ರಾಧಿಕಾರವು ಅಂಥ ನಿರ್ಣಯವನ್ನು ಸಂಪೂರ್ಣವಾಗಿ ಅಥವಾ ಭಾಗಶ:ವಾಗಿ ಪರಿಷ್ಕರಿಸಲು ನಿರಾಕರಿಸಿದ ಸಂದರ್ಭದಲ್ಲಿ ಅಥವಾ ಹದಿನೈದು ದಿನಗಳೊಳಗೆ ಯಾವುದೇ ನಿರ್ಣಯವನ್ನು ತೆಗೆದುಕೊಳ್ಳಲು ವಿಫಲವಾದಲ್ಲಿ, ನಂತರ ಅಂಥ ವಿಷಯವನ್ನು ಕುಲಾಧಿಪತಿಗಳಿಗೆ ಕಳುಹಿಸತಕ್ಕದ್ದು ಮತ್ತು ಈ ಬಗ್ಗೆ ಇವರ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

(6) ಕುಲಪತಿಯವರ ಸೇವೆಗಳನ್ನು, ಪ್ರಬಂಧಕ ಮಂಡಳಿಯ ಅನುಮೋದನೆಯೊಂದಿಗೆ ಮತ್ತು ಸಹಜ ನ್ಯಾಯದ ತತ್ವಗಳನ್ನು ಅನುಸರಿಸಿದ ನಂತರ ಹಾಗೂ ಶಿಸ್ತಿನ ಆಧಾರದ ಮೇಲೆ ಅಂತ್ಯಗೊಳಿಸುವ ಸಂದರ್ಭವೂ ಸೇರಿದಂತೆ, ಪ್ರಕರಣದ ಬಗ್ಗೆ ಕುಲಪತಿಯು ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡಿದ ತರುವಾಯ, ಕುಲಾಧಿಪತಿಯವರು ಅಂತ್ಯಗೊಳಿಸಬಹುದು.

(7) ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಸಂದರ್ಶಕರು, ಸಹ–ಸಂದರ್ಶಕರು ಮತ್ತು ಕುಲಾಧಿಪತಿಯವರು ಇವರುಗಳ ಗೈರು ಹಾಜರಿಯ ಸಂದರ್ಭದಲ್ಲಿ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**17. ಸಹಕುಲಪತಿಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಮೂರು ಜನರನ್ನು ಮೀರದಂತೆ ಸಹಕುಲಪತಿಗಳನ್ನು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**18. ವ್ಯಾಸಂಗ ವಿಭಾಗಗಳ ಡೀನ್‌ಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಪರಿನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವ್ಯಾಸಂಗ ವಿಭಾಗಗಳ ಡೀನ್‌ಗಳನ್ನು ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**19. ಕುಲಸಚಿವರು.–** (1) ಕುಲಾಧಿಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಸಚಿವರನ್ನು ನೇಮಕ ಮಾಡತಕ್ಕದ್ದು.

(2) ಪರಿನಿಯಮಗಳಲ್ಲಿ ಪರಿಭಾಷಿಸಿರುವಂಥ ಎಲ್ಲಾ ಕರಾರುಗಳನ್ನು ವಿಶ್ವವಿದ್ಯಾಲಯದ ಪರವಾಗಿ ಕುಲಸಚಿವರು ಮಾಡಿಕೊಳ್ಳತಕ್ಕದ್ದು ಮತ್ತು ಅದಕ್ಕೆ ಸಹಿ ಹಾಕತಕ್ಕದ್ದು.

(3) ಕುಲಸಚಿವರು ವಿಶ್ವವಿದ್ಯಾಲಯದ ಪರವಾಗಿ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಪರಿನಿಯಮಗಳಿಂದ ಪ್ರದತ್ತಗೊಳಿಸಬಹುದಾದಂಥ ಅಥವಾ ಕುಲಾಧಿಪತಿಯವರು ಮತ್ತು ಕುಲಪತಿಯವರು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು ವಿಶ್ವವಿದ್ಯಾಲಯದ ದಾಖಲೆಗಳು ಮತ್ತು ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು, ಕುಲಪತಿಯವರು ಅಥವಾ ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಅಂಥ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿತಕ್ಕದ್ದು.

**20. ಹಣಕಾಸು ಅಧಿಕಾರಿ.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು, ಪರಿನಿಯಮಗಳ ಮೂಲಕ ಪ್ರದತ್ತಗೊಳಿಸಬಹುದಾದ ಅಂಥ ವಿಧಾನದಲ್ಲಿ ಹಣಕಾಸು ಅಧಿಕಾರಿಯನ್ನು ನೇಮಕ ಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**21. ಇತರ ಅಧಿಕಾರಿಗಳು.–** ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ ನೇಮಕಾತಿಯ ವಿಧಾನ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಕರ್ತವ್ಯಗಳು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ – IV

## ವಿಶ್ವವಿದ್ಯಾಲಯದ ಪ್ರಾಧಿಕಾರಗಳು

**22. ವಿಶ್ವವಿದ್ಯಾಲಯದ ಪ್ರಾಧಿಕಾರಗಳು.–** ಈ ಮುಂದಿನವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:–

(i) ಪ್ರಬಂಧಕ ಮಂಡಳಿ;

(ii) ವ್ಯವಸ್ಥಾಪನ ಮಂಡಳಿ;

(iii) ಶೈಕ್ಷಣಿಕ ಪರಿಷತ್ತು;

(iv) ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು;

(v) ಹಣಕಾಸು ಸಮಿತಿ; ಮತ್ತು

(vi) ವಿಶ್ವವಿದ್ಯಾಲಯದ ಪ್ರಾಧಿಕಾರಗಳೆಂದು ಪರಿನಿಯಮಗಳ ಮೂಲಕ ಘೋಷಿಸಬಹುದಾದ ಅಂಥ ಇತರ ಪ್ರಾಧಿಕಾರಗಳು.

**23. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು.–** (1) ಪ್ರಬಂಧಕ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು – ಅಧ್ಯಕ್ಷರು;

(ii) ಕುಲಪತಿಯವರು – ಸದಸ್ಯರು;

(iii) ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(iv) ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(v) ರಾಜ್ಯ ಸರ್ಕಾರವು ನಾಮ ನಿರ್ದೇಶನ ಮಾಡಿದ ಆಡಳಿತವನ್ನು ಒಳಗೊಂಡಂತೆ ವ್ಯವಸ್ಥಾಪನೆ, ಹಣಕಾಸು ಅಥವಾ ಯಾವುದೇ ಇತರ ವಿಶೇಷ ಕ್ಷೇತ್ರದಲ್ಲಿನ ಒಬ್ಬರು ತಜ್ಞರು;

(vi) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಇಬ್ಬರು ವ್ಯಕ್ತಿಗಳು ಅವರ ಪೈಕಿ ಒಬ್ಬರು ಮಹಿಳೆಯಾಗಿರತಕ್ಕದ್ದು;

(vii) ಸಹ ಕುಲಪತಿಯವರು ಮತದಾನದ ಹಕ್ಕಿಲ್ಲದ ಸದಸ್ಯರಾಗಿರತಕ್ಕದ್ದು;

(viii) ವಿಶ್ವವಿದ್ಯಾಲಯ ಅನುದಾನ ಆಯೋಗದ ನಾಮನಿರ್ದೇಶಿತ ಒಬ್ಬ ಸುಪ್ರಸಿದ್ಧ ಶಿಕ್ಷಣ ತಜ್ಞರು.

(2) ಕುಲಸಚಿವರು ಮತ್ತು ಸಹ ಕುಲಪತಿಗಳು ಮಂಡಳಿಯ ಮತ ದಾನದ ಹಕ್ಕಿರದ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ಪ್ರಬಂಧಕ ಮಂಡಳಿಯ ಸದಸ್ಯರ ಪದಾವಧಿ, ಸರ್ಕಾರದಿಂದ ನಾಮನಿರ್ದೇಶಿತರಾದ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ನೇಮಕಾತಿ, ನವೀಕರಣ ಮತ್ತು ತೆಗೆದುಹಾಕುವುದು ಮುಂತಾದವುಗಳು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಾಧಿಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರ ಗೈರುಹಾಜರಿಯಲ್ಲಿ ಕುಲಾಧಿಪತಿಯವರಿಂದ ನಾಮನಿರ್ದೇಶಿತರಾದ ಯಾರಾದರೂ ಒಬ್ಬರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು. ಅಂಥ ಸಭೆಯ ಅಧ್ಯಕ್ಷತೆಯನ್ನು ವಹಿಸುವುದಕ್ಕೆ ಕುಲಾಧಿಪತಿಯವರು ಯಾವೊಬ್ಬ ವ್ಯಕ್ತಿಯನ್ನೂ ನಾಮನಿರ್ದೇಶನ ಮಾಡಿರದಿದ್ದಲ್ಲಿ, ಸಭೆಯಲ್ಲಿ ಹಾಜರಿರುವ ಸದಸ್ಯರು ಸರಳ ಬಹುಮತದ ಮೂಲಕ ಅವರುಗಳ ಪೈಕಿಯಿಂದಲೇ ಆ ಸಭೆಗೆ ಮಾತ್ರವೇ ಅಧ್ಯಕ್ಷನನ್ನು ಚುನಾಯಿಸತಕ್ಕದ್ದು.

(5) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಿಗೆ, ಅಂಥ ಸಭೆಯಲ್ಲಿ ಹಾಜರಾಗುವ ಮತ್ತು ಮತದಾನ ನೀಡುವ ಮೂರು ಜನ ಸದಸ್ಯರು ಗಣಪೂರ್ತಿ (ಕೋರಂ) ಆಗಿರತಕ್ಕದ್ದು:

ಪರಂತು, ಪ್ರಬಂಧಕ ಮಂಡಳಿಯ ಯಾವುದೇ ಸಭೆಯ ಕೋರಂ ಪೂರ್ಣವಾಗಬೇಕಾದರೆ ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಿರುವುದು ಮತ್ತು ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ನಾಮನಿರ್ದೇಶಿತರು ಹಾಜರಾಗದೇ ಇದ್ದಾಗ ಕುಲಪತಿಯವರು ಹಾಜರಿರುವುದು ಯಾವಾಗಲೂ ಅವಶ್ಯವಾಗಿರತಕ್ಕದ್ದು.

(6) ಪ್ರಬಂಧಕ ಮಂಡಳಿಯು ವಿಶ್ವವಿದ್ಯಾಲಯದ ಪ್ರಧಾನ ಪ್ರಬಂಧಕ ಸಂಸ್ಥೆಯಾಗಿರತಕ್ಕದ್ದು ಮತ್ತು ಅದು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಕಗೊಳಿಸುವುದು;

(ii) ವಿಶ್ವವಿದ್ಯಾಲಯವು ಅನುಸರಿಸಬೇಕಾದ ಕಾರ್ಯನೀತಿಗಳನ್ನು ರಚಿಸುವುದು;

(iii) ಈ ಅಧಿನಿಯಮದ ಅಥವಾ ಪರಿನಿಯಮಗಳ ಅಥವಾ ನಿಯಮಗಳ ಉಪಬಂಧಗಳಿಗೆ ಅನುಗುಣವಾಗಿ ಇರದ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ತೀರ್ಮಾನಗಳನ್ನು ಪುನರೀಕ್ಷಿಸುವುದು;

(iv) ವಿಶ್ವವಿದ್ಯಾಲಯದ ಆಯವ್ಯಯ ಮತ್ತು ವಾರ್ಷಿಕ ವರದಿಗಳನ್ನು ಅನುಮೋದಿಸುವುದು;

(v) ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸುವುದು ಅಥವಾ ಈಗಾಗಲೇ ಇರುವ ಪರಿನಿಯಮಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವುದು ಅಥವಾ ನಿರಸನಗೊಳಿಸುವುದು;

(vi) ವಿಶ್ವವಿದ್ಯಾಲಯವನ್ನು ಸ್ವಯಂಸಮಾಪನಗೊಳಿಸುವ ನಿರ್ಧಾರವನ್ನು ತೆಗೆದುಕೊಳ್ಳುವುದು;

(vii) ಸರ್ಕಾರಕ್ಕೆ ಸಲ್ಲಿಸುವ ಪ್ರಸ್ತಾವಗಳನ್ನು ಅನುಮೋದಿಸುವುದು;

(viii) ಶುಲ್ಕ ನಿಯಂತ್ರಣ ಸಮಿತಿಗೆ ಮೂವರು ಸದಸ್ಯರನ್ನು ನಾಮನಿರ್ದೇಶನ ಮಾಡುವುದು;

(ix) ವಿಶ್ವವಿದ್ಯಾಲಯದ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕೆ ಅಪೇಕ್ಷಣೀಯವೆಂದು ಕಂಡುಬರುವಂಥ ತೀರ್ಮಾನಗಳನ್ನು ಮತ್ತು ಕ್ರಮಗಳನ್ನು ಕೈಗೊಳ್ಳುವುದು.

(7) ಪ್ರಬಂಧಕ ಮಂಡಳಿಯು ಒಂದು ವರ್ಷದಲ್ಲಿ ಕನಿಷ್ಠ ಮೂರು ಸಲ ಸಭೆ ಸೇರತಕ್ಕದ್ದು.

(8) ಪ್ರಬಂಧಕ ಮಂಡಳಿಯು ಶಾಸನದ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ಸಮಯ ಮತ್ತು ಸ್ಥಳದಲ್ಲಿ ಸಭೆ ಸೇರತಕ್ಕದ್ದು.

**24. ವ್ಯವಸ್ಥಾಪನಾ ಮಂಡಳಿ.–** (1). ವ್ಯವಸ್ಥಾಪನಾ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಗಳು;

(ii) ಸಹಕುಲಪತಿಗಳು;

(iii) ಕುಲಸಚಿವರು;

(iv) ಪ್ರಾಯೋಜಕ ಸಂಸ್ಥೆಯ ಇಬ್ಬರು ನಾಮನಿರ್ದೇಶಿತರು;

(v) ಕುಲಪತಿಗಳು ನಾಮನಿರ್ದೇಶಿಸಬಹುದಾದ ವ್ಯಾಸಂಗ ವಿಭಾಗಗಳ ಇಬ್ಬರು ಡೀನ್‌ಗಳು;

(2) ಕುಲಪತಿಯವರು ವ್ಯವಸ್ಥಾಪನಾ ಮಂಡಳಿಯ ಅಧ್ಯಕ್ಷರಾಗಿರತಕ್ಕದ್ದು ಮತ್ತು ಕುಲಸಚಿವರು ವ್ಯವಸ್ಥಾಪನಾ ಮಂಡಳಿಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ವ್ಯವಸ್ಥಾಪನಾ ಮಂಡಳಿಯು ವಿಶ್ವವಿದ್ಯಾಲಯದ ಕಾರ್ಯನಿರ್ವಾಹಕ ಸಂಸ್ಥೆಯಾಗಿರತಕ್ಕದ್ದು. ವ್ಯವಸ್ಥಾಪನಾ ಮಂಡಳಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ವ್ಯವಸ್ಥಾಪನಾ ಮಂಡಳಿಯ ಎಲ್ಲಾ ಸಭೆಗಳಲ್ಲಿ ಯಾವಾಗಲೂ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು ಹಾಗೂ ಕುಲಪತಿಯವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೇ ಇದ್ದ ಸಂದರ್ಭದಲ್ಲಿ ಸಭೆಯಲ್ಲಿ ಹಾಜರಿರುವ ಸದಸ್ಯರು ಚುನಾಯಿಸಿದ ಯಾವುದೇ ಇತರ ಸದಸ್ಯರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ವ್ಯವಸ್ಥಾಪನಾ ಮಂಡಳಿಯ ಸಭೆಯಲ್ಲಿ ಯಾವುದೇ ವಿಷಯವನ್ನು ಕುರಿತು ವಿವಾದ ಉಂಟಾದಲ್ಲಿ ಸದರಿ ವಿಷಯವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯದ ಬಗ್ಗೆ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**25. ಶೈಕ್ಷಣಿಕ ಪರಿಷತ್ತು.**-(1) ಶೈಕ್ಷಣಿಕ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಕಾರ್ಯದರ್ಶಿಗಳು

(iv) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಶೈಕ್ಷಣಿಕ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಶೈಕ್ಷಣಿಕ ಸಂಸ್ಥೆಯಾಗಿರತಕ್ಕದ್ದು ಮತ್ತು ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಹಾಗೂ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**26. ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು.**- (1) ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಸಂಶೋಧನೆ ಮತ್ತು ಅನ್ವೇಷಣಾ ಸಮಿತಿಯಾಗಿರತಕ್ಕದ್ದು ಹಾಗೂ ಸಂಶೋಧನೆ ಮತ್ತು ಅನ್ವೇಷಣಾ ಕ್ಷೇತ್ರಗಳ ಆದ್ಯತೆಯೂ ಒಳಗೊಂಡಂತೆ, ವಿಶ್ವವಿದ್ಯಾಲಯವು ಕೈಗೊಳ್ಳಬೇಕಾದ ಸಂಶೋಧನೆ ಮತ್ತು ಅನ್ವೇಷಣೆಯ ಬಗ್ಗೆ ಒಂದು ವ್ಯಾಪಕವಾದ ಪರಿಪೂರ್ಣ ಭವಿಷ್ಯದ್ ದೃಷ್ಟಿಯನ್ನು ಒದಗಿಸತಕ್ಕದ್ದು. ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು, ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಮತ್ತು ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಸಂಶೋಧನೆ ಮತ್ತು ಅನ್ವೇಷಣಾ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಸಂಶೋಧನೆಯ ಡೀನ್ – ಕಾರ್ಯದರ್ಶಿ

(iv) ಅನ್ವೇಷಣಾ ವಿಭಾಗದ ಮುಖ್ಯಸ್ಥರು – ಸದಸ್ಯರು

(V) ಎಲ್ಲಾ ವ್ಯಾಸಂಗ ವಿಭಾಗಗಳ ಡೀನ್‌ಗಳು – ಸದಸ್ಯರು ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

**27. ಹಣಕಾಸು ಸಮಿತಿ.**- (1) ಹಣಕಾಸು ಸಮಿತಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಾಧಿಪತಿಯವರು ಅಥವಾ ಅವರ ನಾಮನಿರ್ದೇಶಿತರು – ಅಧ್ಯಕ್ಷರು

(ii) ಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಸದಸ್ಯರು

(iv) ಹಣಕಾಸು ಅಧಿಕಾರಿ – ಕಾರ್ಯದರ್ಶಿ

(v) ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು – ಸದಸ್ಯರು; ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಹಣಕಾಸು ಸಮಿತಿಯು ಹಣಕಾಸಿನ ವಿಷಯಗಳನ್ನು ಕೈಗೊಳ್ಳುವ ವಿಶ್ವವಿದ್ಯಾಲಯದ ಪ್ರಧಾನ ಹಣಕಾಸು ಸಂಸ್ಥೆಯಾಗಿರತಕ್ಕದ್ದು ಹಾಗೂ ಅದು ಈ ಅಧಿನಿಯಮ, ನಿಯಮಗಳು ಮತ್ತು ಪರಿನಿಯಮಗಳ ಉಪಬಂಧಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಹಣಕಾಸು ವಿಷಯಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**28. ಇತರ ಪ್ರಾಧಿಕಾರಗಳು.–** ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ರಚನೆ, ಅಧಿಕಾರಗಳು ಹಾಗೂ ಪ್ರಕಾರ್ಯಗಳು ಪರಿನಿಯಮಗಳಿಂದ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

**29. ಒಂದು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯತ್ವಕ್ಕೆ ಅನರ್ಹತೆ.–** ವಿಶ್ವವಿದ್ಯಾಲಯದ ಸಂಸ್ಥೆಗಳ ಯಾವುವೇ ಪ್ರಾಧಿಕಾರದ ಒಬ್ಬ ವ್ಯಕ್ತಿಯು,–

(ಎ) ಅಸ್ವಸ್ಥ ಚಿತ್ತನಾಗಿದ್ದು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿಸಲ್ಪಟ್ಟಿದ್ದರೆ;

(ಬಿ) ಅವಿಮುಕ್ತ ದಿವಾಳಿಯಾಗಿದ್ದರೆ;

(ಸಿ) ನೈತಿಕ ಅಧ:ಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದರೆ;

(ಡಿ) ಖಾಸಗಿ ಬೋಧನಾ ತರಗತಿಗಳನ್ನು ನಡೆಸುತ್ತಿದ್ದರೆ ಅಥವಾ ಸ್ವತ: ನಿರತನಾಗಿದ್ದರೆ;

(ಇ) ಯಾವುದೇ ವಿಧದಲ್ಲಿ, ಎಲ್ಲಿಯೇ, ಯಾವುದೇ ಪರೀಕ್ಷೆಯನ್ನು ನಡೆಸುವಲ್ಲಿ ಅನುಚಿತ ಅಭ್ಯಾಸದಲ್ಲಿ ತೊಡಗಿದ್ದಕ್ಕಾಗಿ ಅಥವಾ ಉತ್ತೇಜಿಸಿದ್ದಕ್ಕಾಗಿ ದಂಡಿತನಾಗಿದ್ದರೆ;

(ಎಫ್) ಪ್ರಾಯೋಜಿತ ಸಂಸ್ಥೆಯು ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಯಾವೊಬ್ಬ ಸದಸ್ಯನನ್ನು ಆ ಪದವನ್ನು ಹೊಂದಿರುವುದಕ್ಕೆ ಅರ್ಹನಲ್ಲನೆಂದು ಲಿಖಿತದಲ್ಲಿ ಅಭಿಪ್ರಾಯ ನೀಡಿದಾಗಲೆಲ್ಲಾ,

–ಸದಸ್ಯನಾಗಿರುವುದಕ್ಕೆ ಅನರ್ಹನಾಗತಕ್ಕದ್ದು.

**30. ಖಾಲಿಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಕಾರ್ಯ ಅಥವಾ ವ್ಯವಹರಣೆಗಳು ಕೇವಲ ಅದರಲ್ಲಿ ಯಾವುದೇ ಖಾಲಿಸ್ಥಾನ ಇದೆ ಎಂಬ ಕಾರಣದಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣದಿಂದ ಮಾತ್ರವೇ ಅಸಿಂಧುವಾಗತಕ್ಕದ್ದಲ್ಲ.

**31. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು.–** (1) ಯಾವುವೇ ಕಾರ್ಯಸೂಚಿ ವಿಷಯಗಳನ್ನು ಕುಲಾಧಿಪತಿಯವರ ಪೂರ್ವಾನುಮೋದನೆಯನ್ನು ಪಡೆಯದೇ ಪ್ರಬಂಧಕ ಮಂಡಳಿಯ ಅಥವಾ ವ್ಯವಸ್ಥಾಪನಾ ಮಂಡಳಿಯ ಅಥವಾ ಯಾವುದೇ ಸಮಿತಿಯ ಸಭೆಗಳ ಕಾರ್ಯಸೂಚಿ ವಿಷಯಗಳಲ್ಲಿ ಸೇರಿಸತಕ್ಕದ್ದಲ್ಲ ಅಥವಾ ಚರ್ಚೆಗೆ ತೆಗೆದುಕೊಳ್ಳತಕ್ಕದ್ದಲ್ಲ ಮತ್ತು ತೀರ್ಮಾನಿಸತಕ್ಕದ್ದಲ್ಲ.

(2) ಈ ಅಧಿನಿಯಮದ ಯಾವುದೇ ಉಪಬಂಧಗಳನ್ನು ಪಾಲಿಸದೆ ಇರುವ ಸಂದರ್ಭದಲ್ಲಿ, ಕುಲಾಧಿಪತಿಯವರು ವಿಶ್ವವಿದ್ಯಾಲಯದ ಯಾವುದೇ ಪದಾಧಿಕಾರಿ ಅಥವಾ ಸಂಸ್ಥೆಯು ತೆಗೆದುಕೊಂಡ ಎಲ್ಲಾ ತೀರ್ಮಾನಗಳನ್ನು ವಿಪರ್ಯಯಗೊಳಿಸುವ ಮೂಲಕ ಪರಿಹಾರ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಅಧಿಕಾರವನ್ನು ಎಲ್ಲಾ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಅಂಥ ಪರಿಹಾರ ಕ್ರಮದ ಪರಿಣಾಮವಾಗಿ ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ವಿಶ್ವವಿದ್ಯಾಲಯದ ಪದಾಧಿಕಾರಿ ಅಥವಾ ಸಂಸ್ಥೆಯು ಕೈಗೊಂಡಿದ್ದ ಎಲ್ಲಾ ಅಂಥ ಕ್ರಮಗಳು, ಮೊದಲಿನಿಂದಲೂ ಶೂನ್ಯ ಮತ್ತು ಅಕೃತ ಎಂದು ಭಾವಿಸತಕ್ಕದ್ದು ಹಾಗೂ ತತ್ಪರಿಣಾಮವಾಗಿ, ಉಪಬಂಧ ಪಾಲಿಸದೇ ಇದ್ದ ವಿಷಯ ಅಥವಾ ನಿರ್ಧಾರದ ಸಂಬಂಧದಲ್ಲಿ ಅದಕ್ಕೆ ಮುಂಚೆ ಇದ್ದ ವಸ್ತುಸ್ಥಿತಿಯೇ ಮುಂದುವರಿಯತಕ್ಕದ್ದು.

## ಅಧ್ಯಾಯ – V

## ಪರಿನಿಯಮಗಳು ಮತ್ತು ವಿನಿಯಮಗಳು

**32. ಪರಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಪರಿನಿಯಮಗಳು ವಿಶ್ವವಿದ್ಯಾಲಯಕ್ಕೆ ಮತ್ತು ಸಿಬ್ಬಂದಿಗೆ ಸಂಬಂಧಿಸಿದ ಎಲ್ಲಾ ಅಥವಾ ಯಾವುದೇ ವಿಷಯಕ್ಕೆ ಉಪಬಂಧ ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಕಾರ್ಯಕಲಾಪಗಳನ್ನು ನಡೆಸುವ ಮತ್ತು ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸದಿರುವ ಸಂಸ್ಥೆಗಳ ರಚನೆಯ ಕಾರ್ಯವಿಧಾನ;

(ii) ಶಾಶ್ವತ ಶಾಸನಬದ್ಧ ದತ್ತಿ ನಿಧಿ, ವಿಶ್ವವಿದ್ಯಾಲಯ ದತ್ತಿ ನಿಧಿ, ಸಾಮಾನ್ಯ ನಿಧಿ ಹಾಗೂ ಅಭಿವೃದ್ಧಿ ನಿಧಿಗಳ ನಿರ್ವಹಣೆ;

(iii) ಕುಲಪತಿಗಳು, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರ ನೇಮಕಾತಿಯ ನಿಬಂಧನೆಗಳು ಹಾಗೂ ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಪ್ರಕಾರ್ಯಗಳು;

(iv) ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ, ಅಧ್ಯಾಪಕರ ಮತ್ತು ನೌಕರರ ನೇಮಕಾತಿ ವಿಧಾನ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(v) ವಿಶ್ವವಿದ್ಯಾಲಯ ಹಾಗೂ ಅದರ ಅಧಿಕಾರಿಗಳು, ವ್ಯಾಸಂಗ ವಿಭಾಗದ (ಫ್ಯಾಕಲ್ಟಿ) ಸದಸ್ಯರು, ನೌಕರರು ಹಾಗೂ ವಿದ್ಯಾರ್ಥಿಗಳ ನಡುವೆ ಉಂಟಾದ ವಿವಾದಗಳನ್ನು ಪರಿಹರಿಸುವ ಕಾರ್ಯವಿಧಾನ;

(vi) ವಿಭಾಗಗಳು ಮತ್ತು ವ್ಯಾಸಂಗ ವಿಭಾಗಗಳ (ಫ್ಯಾಕಲ್ಟಿಗಳ) ಸೃಜನೆ, ರದ್ದತಿ ಅಥವಾ ಪುನಾರಚನೆ;

(vii) ಇತರ ವಿಶ್ವವಿದ್ಯಾಲಯಗಳು ಅಥವಾ ಉನ್ನತ ಕಲಿಕಾ ಸಂಸ್ಥೆಗಳ ಜೊತೆಯಲ್ಲಿ ಸಹಕರಿಸಬೇಕಾದ ರೀತಿ;

(viii) ಗೌರವ ಪದವಿಗಳ ನೀಡಿಕೆಯ ಕಾರ್ಯವಿಧಾನ;

(ix) ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿವೇತನ ಮಂಜೂರಾತಿಗೆ ಸಂಬಂಧಿಸಿದ ಉಪಬಂಧಗಳು;

(x) ವಿವಿಧ ವ್ಯಾಸಂಗ ಕ್ರಮಗಳಲ್ಲಿನ ಸೀಟುಗಳ ಸಂಖ್ಯೆಗೆ ಸಂಬಂಧಿಸಿದ ಕಾರ್ಯನೀತಿಗಳು ಮತ್ತು ಅಂಥ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಕಾರ್ಯವಿಧಾನ;

(xi) ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಶುಲ್ಕಕ್ಕೆ ಸಂಬಂಧಿಸಿದ ಕಾರ್ಯನೀತಿ;

(xii) ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಉಚಿತ ಶಿಕ್ಷಣ, ಪದಕಗಳು ಹಾಗೂ ಬಹುಮಾನಗಳನ್ನು ಪ್ರಾರಂಭಿಸುವುದು;

(xiii) ಪ್ರಬಂಧಕ ಮಂಡಳಿಯು ನಿರ್ಧರಿಸಬಹುದಾದ ಅಥವಾ ಈ ಅಧಿನಿಯಮದ ಅಡಿಯಲ್ಲಿ ಪರಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬೇಕಾದ ಅಗತ್ಯತೆಯುಳ್ಳ ಯಾವುದೇ ಇತರ ವಿಷಯಗಳು.

**33. ಪರಿನಿಯಮಗಳ ರಚನೆ ವಿಧಾನ.–** (1) ವ್ಯವಸ್ಥಾಪನಾ ಮಂಡಳಿಯು ರಚಿಸಿದ ಮೊದಲ ಶಾಸನಗಳನ್ನು ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ವ್ಯವಸ್ಥಾಪನಾ ಮಂಡಳಿಯು ಸಲ್ಲಿಸಿದ ಮೊದಲ ಪರಿನಿಯಮಗಳನ್ನು ಪ್ರಬಂಧಕ ಮಂಡಳಿಯು ಪರಿಗಣಿಸತಕ್ಕದ್ದು ಹಾಗೂ ತಾನು ಅವಶ್ಯವೆಂದು ಭಾವಿಸಬಹುದಾದ ಅಂಥ ಮಾರ್ಪಾಡುಗಳು, ಯಾವುದಾದರು ಇದ್ದಲ್ಲಿ, ಅವುಗಳೊಡನೆ ತನ್ನ ಅನುಮೋದನೆಯನ್ನು ನೀಡತಕ್ಕದ್ದು.

(3) ವಿಶ್ವವಿದ್ಯಾಲಯವು, ಪ್ರಬಂಧಕ ಮಂಡಳಿಯು ಅನುಮೋದಿಸಿದ ಮೊದಲ ಪರಿನಿಯಮಗಳನ್ನು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ಪ್ರಕಟಿಸತಕ್ಕದ್ದು ಮತ್ತು ತದನಂತರ ಮೊದಲ ಪರಿನಿಯಮಗಳ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**34. ಪರಿನಿಯಮಗಳ ತಿದ್ದುಪಡಿಯ ಅಧಿಕಾರ.–** ಪ್ರಬಂಧಕ ಮಂಡಳಿಯು ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸಬಹುದು ಅಥವಾ ಪರಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ಅವನ್ನು ನಿರಸನಗೊಳಿಸಬಹುದು.

**35. ವಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ವಿನಿಯಮಗಳು ಈ ಮುಂದಿನ ಎಲ್ಲಾ ಅಥವಾ ಯಾವುದೇ ವಿಷಯಗಳಿಗೆ ಉಪಬಂಧಗಳನ್ನು ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ವಿದ್ಯಾರ್ಥಿ ಪಟ್ಟಿಯಲ್ಲಿ ಅವರುಗಳ ದಾಖಲಾತಿ ಹಾಗೂ ಮುಂದುವರಿಕೆ;

(ii) ವಿಶ್ವವಿದ್ಯಾಲಯದ ಎಲ್ಲಾ ಪದವಿಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ನಿಗದಿಪಡಿಸತಕ್ಕ ವ್ಯಾಸಂಗ ಕ್ರಮಗಳು;

(iii) ಪದವಿಗಳ ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರದಾನ;

(iv) ಸಂಶೋಧನಾ ವೇತನಗಳು (ಫೆಲೋಶಿಪ್), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಪದಕಗಳು ಮತ್ತು ಬಹುಮಾನಗಳನ್ನು ನೀಡಲು ಷರತ್ತುಗಳು;

(v) ಪರೀಕ್ಷೆಗಳನ್ನು ನಡೆಸುವುದು ಹಾಗೂ ಪರೀಕ್ಷೆ ನಡೆಸುವ ಸಂಸ್ಥೆಗಳು, ಪರೀಕ್ಷಕರು, ಪರೀಕ್ಷಾ ಮೇಲ್ವಿಚಾರಕರು, ಟ್ಯಾಬುಲೇಟರ್‌ಗಳು ಮತ್ತು ಮಾಡರೇಟರ್‌ಗಳ ನೇಮಕಾತಿ ಷರತ್ತುಗಳು ಮತ್ತು ವಿಧಾನ ಹಾಗೂ ಅವರ ಕರ್ತವ್ಯಗಳು;

(vi) ವಿಶ್ವವಿದ್ಯಾಲಯದ ಪರೀಕ್ಷೆಗಳಿಗೆ, ಪದವಿಗಳಿಗೆ ಹಾಗೂ ಇತರ ಶೈಕ್ಷಣಿಕ ಪ್ರಶಸ್ತಿಗಳಿಗೆ ಪ್ರವೇಶಕ್ಕೆ ವಿಧಿಸತಕ್ಕ ಶುಲ್ಕ;

(vii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನಲ್ಲಿ ವಿದ್ಯಾರ್ಥಿಗಳ ನಿವಾಸಕ್ಕಾಗಿ ಷರತ್ತುಗಳು;

(viii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಶಿಸ್ತು ಪಾಲನೆ;

(ix) ಈ ಅಧಿನಿಯಮದ ಅಡಿಯಲ್ಲಿನ ಪರಿನಿಯಮಗಳಲ್ಲಿ ಉಪಬಂಧ ಕಲ್ಪಿಸಬಹುದಾಂಥ ಇತರ ಎಲ್ಲಾ ವಿಷಯಗಳು.

**36. ವಿನಿಯಮಗಳ ರಚನೆ ವಿಧಾನ.–** ವಿನಿಯಮಗಳನ್ನು ಶೈಕ್ಷಣಿಕ ಪರಿಷತ್ತು ರಚಿಸತಕ್ಕದ್ದು ಹಾಗೂ ವ್ಯವಸ್ಥಾಪನಾ ಮಂಡಳಿಯು ಅನುಮೋದಿಸತಕ್ಕದ್ದು.

**37. ವಿನಿಯಮಗಳ ತಿದ್ದುಪಡಿಗೆ ಅಧಿಕಾರ.–** ವ್ಯವಸ್ಥಾಪನಾ ಮಂಡಳಿಯ ಅನುಮೋದನೆಯೊಡನೆ ಶೈಕ್ಷಣಿಕ ಪರಿಷತ್ತು ಹೊಸ ವಿನಿಯಮಗಳನ್ನು ಅಥವಾ ಹೆಚ್ಚುವರಿ ವಿನಿಯಮಗಳನ್ನು ರಚಿಸಬಹುದು ಅಥವಾ ವಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ನಿರಸನಗೊಳಿಸಬಹುದು.

**38. ಶುಲ್ಕ ನಿಯಂತ್ರಣ ಸಮಿತಿ.–** (1) ಸರ್ಕಾರವು ರಚಿಸಿದ ನಿವೃತ್ತ ಸರ್ವೋಚ್ಚ ನ್ಯಾಯಾಲಯದ ಅಥವಾ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು ಮುಖ್ಯಸ್ಥರಾಗಿರುವ ಮತ್ತು ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ, ಉನ್ನತ ಶಿಕ್ಷಣ ಪ್ರಭಾರದಲ್ಲಿರುವ ಸರ್ಕಾರದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು, ವೈದ್ಯಕೀಯ ಶಿಕ್ಷಣದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು, ಒಬ್ಬ ಮಹಿಳೆಯೂ ಸೇರಿದಂತೆ ಪ್ರಬಂಧಕ ಮಂಡಳಿಯು ನಾಮನಿರ್ದೇಶಿಸಿದ ಇಬ್ಬರು ಶಿಕ್ಷಣ ತಜ್ಞರು ಇವರುಗಳನ್ನು ಒಳಗೊಂಡ ಒಂದು ಶುಲ್ಕ ನಿಯಂತ್ರಣ ಸಮಿತಿಯು, 9ನೇ ಪ್ರಕರಣದ ಅಡಿಯಲ್ಲಿ ಕರ್ನಾಟಕದ ವಿದ್ಯಾರ್ಥಿಗಳಿಗಾಗಿ ಮೀಸಲಿರಿಸಿದ ವಿಶ್ವವಿದ್ಯಾಲಯದ ಸ್ಥಾನಗಳ ಶುಲ್ಕವನ್ನು ನಿಯಂತ್ರಿಸತಕ್ಕದ್ದು. ಸಮಿತಿಯಲ್ಲಿ ಈ ಉದ್ದೇಶಕ್ಕಾಗಿ ಒಬ್ಬರು ಖ್ಯಾತ ಚಾರ್ಟರ್ಡ್ ಅಕೌಂಟೆಂಟ್ ರವರನ್ನು ಸಹ ಸದಸ್ಯನನ್ನಾಗಿ ಸೇರಿಸಿಕೊಳ್ಳತಕ್ಕದ್ದು.

(2) ಸಮಿತಿಯು ವಿಶ್ವವಿದ್ಯಾಲಯದ ಪ್ರವೇಶಗಳ ಮತ್ತು ಶುಲ್ಕದ ಸಂಗ್ರಹಣೆಯ ಅನುಪಾಲನೆಯನ್ನು ನೋಡಿಕೊಳ್ಳತಕ್ಕದ್ದು.

## ಅಧ್ಯಾಯ – VI

### ಸಂಕೀರ್ಣ

**39. ನೌಕರರ ಸೇವಾ ಷರತ್ತುಗಳು.–** (1) ಪರಿನಿಯಮಗಳ ಮತ್ತು ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಥವಾ ನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳು, ಯಾವುದಾದರೂ ಇದ್ದಲ್ಲಿ, ಅವುಗಳಿಗೆ ಒಳಪಟ್ಟು ಪ್ರತಿಯೊಬ್ಬ ನೌಕರನು ಲಿಖಿತ ಕರಾರಿನ ಅಡಿಯಲ್ಲಿ ನೇಮಕಗೊಳ್ಳತಕ್ಕದ್ದು ಮತ್ತು ಅದನ್ನು ವಿಶ್ವವಿದ್ಯಾಲಯದಲ್ಲಿ ಇಟ್ಟುಕೊಳ್ಳತಕ್ಕದ್ದು ಹಾಗೂ ಅದರ ಪ್ರತಿಯನ್ನು ಸಂಬಂಧಪಟ್ಟ ನೌಕರನಿಗೆ ನೀಡತಕ್ಕದ್ದು.

(2) ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಕಾರ್ಯವಿಧಾನಗಳ ಮೂಲಕ ನಿಯಂತ್ರಿಸತಕ್ಕದ್ದು.

(3) ಕರಾರಿನಿಂದಾಗಿ ವಿಶ್ವವಿದ್ಯಾಲಯ ಮತ್ತು ನೌಕರನ ಮಧ್ಯದಲ್ಲಿ ಉದ್ಭವಿಸಬಹುದಾದ ಯಾವುದೇ ವಿವಾದವನ್ನು, ಲಿಖಿತ ಕರಾರಿನಲ್ಲಿ ಉಪಬಂಧಿಸಿದ ವಿಧಾನದಲ್ಲಿ ಹಾಗೂ ಪರಿನಿಯಮಗಳ ಅನುಸಾರವಾಗಿ ಪರಿಹರಿಸತಕ್ಕದ್ದು.

**40. ಮೇಲ್ಮನವಿ ಹಕ್ಕು.–** ವಿಶ್ವವಿದ್ಯಾಲಯವು ತನ್ನ ನೌಕರರ ಅಥವಾ ವಿದ್ಯಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡ ಸಂದರ್ಭದಲ್ಲಿ, ಬಾಧಿತ ನೌಕರ ಅಥವಾ ವಿದ್ಯಾರ್ಥಿಗಳು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಮೇಲ್ಮನವಿ ಹಕ್ಕನ್ನು ಹೊಂದಿರತಕ್ಕದ್ದು.

**41. ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿ .–** ವಿಶ್ವವಿದ್ಯಾಲಯವು, ತನ್ನ ನೌಕರರ ಪ್ರಯೋಜನಕ್ಕಾಗಿ, ಪರಿನಿಯಮಗಳು ಮತ್ತು ಜಾರಿಯಲ್ಲಿರುವ ಕಾನೂನುಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿಯನ್ನು ರಚಿಸತಕ್ಕದ್ದು ಹಾಗೂ ಅಂಥ ವಿಮಾ ಯೋಜನೆಗಳನ್ನು ಒದಗಿಸತಕ್ಕದ್ದು.

**42. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಇತರ ಸಂಸ್ಥೆಯ ಸದಸ್ಯನಾಗಿ ಯಾವೊಬ್ಬ ವ್ಯಕ್ತಿಯು ಸೂಕ್ತವಾಗಿ ಆಯ್ಕೆಯಾಗಿದ್ದಾನೆಯೇ ಅಥವಾ ನೇಮಕಗೊಂಡಿದ್ದಾನೆಯೇ ಅಥವಾ ಅದಕ್ಕೆ ಅರ್ಹನಾಗಿದ್ದಾನೆಯೇ ಎಂಬ ಯಾವುದೇ ಪ್ರಶ್ನೆ ಉದ್ಭವಿಸಿದರೆ, ಆ ವಿಷಯವನ್ನು ತೀರ್ಮಾನಕ್ಕಾಗಿ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**43. ಸಮಿತಿಗಳ ರಚನೆ.–** 22ನೇ ಪ್ರಕರಣದಲ್ಲಿ ನಮೂದಿಸಿದ ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಅಧಿಕಾರವನ್ನು ಹೊಂದಿರುವ ಅಂಥ ಸದಸ್ಯರನ್ನು ಒಳಗೊಂಡ ಅಂಥ ಪ್ರಾಧಿಕಾರದ ಒಂದು ಸಮಿತಿಯನ್ನು ರಚಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**44. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಂಸ್ಥೆಯ ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ಪೈಕಿ ಯಾವುದೇ ಸ್ಥಾನವು ಆಕಸ್ಮಿಕವಾಗಿ ಖಾಲಿಯಾದರೆ, ಯಾರ ಸ್ಥಾನವು ಖಾಲಿಯಾಗಿ ತುಂಬಬೇಕಾಗಿ ಬಂದಿದೆಯೋ ಆ ಸದಸ್ಯನನ್ನು ಯಾವ ರೀತಿಯಲ್ಲಿ ಆರಿಸಲಾಗಿತ್ತೋ ಅದೇ ರೀತಿಯಲ್ಲಿ ಹೊಸ ಸದಸ್ಯನನ್ನು ಆರಿಸಿ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ಖಾಲಿ ಸ್ಥಾನವನ್ನು ಭರ್ತಿ ಮಾಡಿದ ವ್ಯಕ್ತಿಯು ಆತನು ಯಾವ ಸದಸ್ಯನ ಸ್ಥಾನದಲ್ಲಿ ಭರ್ತಿಯಾಗಿರುವನೋ ಆ ಸದಸ್ಯನು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯನಾಗಿ ಉಳಿಯುತ್ತಿದ್ದ ಬಾಕಿ ಅವಧಿಯವರೆಗೆ ಮಾತ್ರ ಸದಸ್ಯನಾಗಿರತಕ್ಕದ್ದು.

**45. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.–** ಈ ಅಧಿನಿಯಮ ಅಥವಾ ಪರಿನಿಯಮಗಳು ಅಥವಾ ನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ವಿಶ್ವವಿದ್ಯಾಲಯದ ಯಾವೊಬ್ಬ ಅಧಿಕಾರಿ ಅಥವಾ ಇತರ ನೌಕರರ ವಿರುದ್ಧ ಯಾವುದೇ ದಾವೆ ಅಥವಾ ಇತರ ಕಾನೂನು ವ್ಯವಹರಣೆಗಳನ್ನು ನಡೆಸಲು ಅವಕಾಶ ಇರತಕ್ಕದ್ದಲ್ಲ.

**46. ತಾತ್ಕಾಲಿಕ ಉಪಬಂಧಗಳು.–** ಈ ಅಧಿನಿಯಮ ಮತ್ತು ಪರಿನಿಯಮಗಳ ಯಾವುದೇ ಇತರ ಉಪಬಂಧಗಳಲ್ಲಿ ಏನೇ ಇದ್ದರೂ,–

(i) ಮೊದಲ ಕುಲಪತಿ ಮತ್ತು ಸಹಕುಲಪತಿ, ಯಾರಾದರೂ ಇದ್ದರೆ, ಅವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(ii) ಮೊದಲ ಕುಲಸಚಿವರನ್ನು ಮತ್ತು ಮೊದಲ ಹಣಕಾಸು ಅಧಿಕಾರಿಯವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು; ಮತ್ತು

(iii) ಮೊದಲ ವ್ಯವಸ್ಥಾಪನ ಮಂಡಳಿ, ಮೊದಲ ಹಣಕಾಸು ಸಮಿತಿ, ಮೊದಲ ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಹಾಗೂ ಮೊದಲ ಶೈಕ್ಷಣಿಕ ಪರಿಷತ್ತನ್ನು ಕುಲಾಧಿಪತಿಯವರು ರಚಿಸತಕ್ಕದ್ದು.

**47. ಶಾಶ್ವತ ಶಾಸನಬದ್ಧ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಕನಿಷ್ಠ ಇಪ್ಪತ್ತೈದು ಕೋಟಿ ರೂಪಾಯಿಗಳನ್ನುಳ್ಳ ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು ಇದರ ಪೈಕಿ ಕನಿಷ್ಠ ಹದಿನೈದು ಕೋಟಿ ರೂಪಾಯಿಗಳು ನಗದು ರೂಪದಲ್ಲಿ ಮತ್ತು ಇನ್ನುಳಿದಿದ್ದು ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ಇರತಕ್ಕದ್ದು ಮತ್ತು ಇದನ್ನು ತಾನಾಗಿಯೆ ಹೆಚ್ಚಿಸಬಹುದಾಗಿದ್ದು ಆದರೆ ಕಡಿಮೆ ಮಾಡತಕ್ಕದ್ದಲ್ಲ:

ಪರಂತು, ಬೆಂಗಳೂರು ಅಥವಾ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊರಗಿರುವ ವಿಶ್ವವಿದ್ಯಾಲಯದ ಸಂದರ್ಭದಲ್ಲಿ ಕನಿಷ್ಠ ಹತ್ತು ಕೋಟಿ ರೂಪಾಯಿಗಳು ನಗದು ರೂಪದಲ್ಲಿರತಕ್ಕದ್ದು ಮತ್ತು ಉಳಿದ ಐದು ಕೋಟಿ ರೂಪಾಯಿಗಳು ಬ್ಯಾಂಕ್ ಗ್ಯಾರಂಟಿಯ ರೂಪದಲ್ಲಿರತಕ್ಕದ್ದು.

(2) ವಿಶ್ವವಿದ್ಯಾಲಯವು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಹಣವನ್ನು ಹೂಡಲು ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯವು ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಗೆ ವರ್ಗಾವಣೆ ಮಾಡಬಹುದು. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನೂ ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(4) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಿದ ವರಮಾನದ ಶೇಕಡಾ ಎಪ್ಪತ್ತೈದರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತೈದರಷ್ಟನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಯಲ್ಲಿ ಪುನ: ತೊಡಗಿಸತಕ್ಕದ್ದು.

**48. ವಿಶ್ವವಿದ್ಯಾಲಯದ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ನಿಧಿಗಳನ್ನು ಒಳಗೊಂಡ ವಿಶ್ವವಿದ್ಯಾಲಯದ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದು ಕಾಲಕಾಲಕ್ಕೆ ಸ್ವೀಕರಿಸಬಹುದಾದ ದೇಣಿಗೆಗಳು ಮತ್ತು ಇತರ ನಿಧಿಗಳನ್ನು ಒಳಗೊಂಡಿರತಕ್ಕದ್ದು.

(2) ವಿಶ್ವವಿದ್ಯಾಲಯವು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ವಿಶ್ವವಿದ್ಯಾಲಯದ ದತ್ತಿನಿಧಿಯನ್ನು ಹೂಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯ ದತ್ತಿ ನಿಧಿಯು, ವಿಶ್ವವಿದ್ಯಾಲಯವು ತನ್ನ ಸಾಮಾಜಿಕ ಧ್ಯೇಯೋದ್ದೇಶಗಳನ್ನು ನೆರವೇರಿಸುವ ಸಂದರ್ಭದಲ್ಲಿ ಮತ್ತು / ಅಥವಾ ಮುಂಗಾಣದ ಸನ್ನಿವೇಶದಲ್ಲಿ ಉದ್ಭವಿಸಬಹುದಾದ ಹಣಕಾಸು ಸವಾಲುಗಳಿಂದ ತನ್ನನ್ನು ರಕ್ಷಿಸಿಕೊಳ್ಳುವುದಕ್ಕಾಗಿ, ಸ್ವಇಚ್ಛೆಯಿಂದ ನಿರ್ವಹಿಸಿಕೊಂಡು ಬರಲು ಮತ್ತು ಜವಾಬ್ದಾರಿಯಿಂದ ಹಣ ಹೂಡಿಕೆ ಮಾಡಲು ಇಚ್ಛೆಯುಳ್ಳವರಾಗಿ ಸ್ವಯಂ ವಿಧಿಸಿಕೊಂಡ ನಿಧಿಯಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಗೆ ವರ್ಗಾಯಿಸಬಹುದು. ವಿಶ್ವವಿದ್ಯಾಲಯದ ಸಮಾಪಣೆಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನು ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(5) ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಬರುವ ವರಮಾನದ ಶೇಕಡಾ ಎಂಭತ್ತರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸದ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತರಷ್ಟನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**49. ಸಾಮಾನ್ಯ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಸಾಮಾನ್ಯ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯವು ವಿಧಿಸಬಹುದಾದ ಎಲ್ಲಾ ಶುಲ್ಕಗಳು;

(ii) ಯಾವುದೇ ಇತರ ಮೂಲದಿಂದ ಸ್ವೀಕರಿಸಲಾದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ದೇಣಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು;

(2) ಸಾಮಾನ್ಯ ನಿಧಿಗೆ ಜಮಾ ಮಾಡುವ ನಿಧಿಗಳನ್ನು ವಿಶ್ವವಿದ್ಯಾಲಯದ ಎಲ್ಲಾ ಆವರ್ತಕ ವೆಚ್ಚಗಳನ್ನು ಭರಿಸಲು ಉಪಯೋಗಿಸಿಕೊಳ್ಳತಕ್ಕದ್ದು.

**50. ಅಭಿವೃದ್ಧಿ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಅಭಿವೃದ್ಧಿ ನಿಧಿಯನ್ನು ಸಹ ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿದ್ಯಾರ್ಥಿಗಳಿಂದ ವಿಧಿಸಬಹುದಾದ ಅಭಿವೃದ್ಧಿ ಶುಲ್ಕಗಳು;

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ವಿಶ್ವವಿದ್ಯಾಲಯದ ಅಭಿವೃದ್ಧಿಯ ಉದ್ದೇಶಗಳಿಗಾಗಿ ಯಾವುದೇ ಇತರ ಮೂಲಗಳಿಂದ ಸ್ವೀಕರಿಸಿದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ವಂತಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು; ಮತ್ತು

(v) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಲಾದ ಎಲ್ಲಾ ವರಮಾನಗಳು.

(2) ಅಭಿವೃದ್ಧಿ ನಿಧಿಗೆ ಕಾಲಕಾಲಕ್ಕೆ ಜಮಾ ಮಾಡಿದ ನಿಧಿಯನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಉಪಯೋಗಿಸಕೊಳ್ಳತಕ್ಕದ್ದು.

**51. ನಿಧಿಗಳ ನಿರ್ವಹಣೆ.–** 47, 48, 49 ಮತ್ತು 50ನೇ ಪ್ರಕರಣಗಳಡಿಯಲ್ಲಿ ಸ್ಥಾಪಿಸಲಾದ ನಿಧಿಗಳನ್ನು ಪ್ರಬಂಧಕ ಮಂಡಳಿಯ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ನಿಯಂತ್ರಿಸತಕ್ಕದ್ದು ಹಾಗೂ ನಿರ್ವಹಿಸತಕ್ಕದ್ದು.

**52. ವಾರ್ಷಿಕ ವರದಿ.–** (1) ವಿಶ್ವವಿದ್ಯಾಲಯದ ವಾರ್ಷಿಕ ವರದಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ಅದರ ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಪ್ರಬಂಧಕ ಮಂಡಳಿಯು ವಾರ್ಷಿಕ ವರದಿಯನ್ನು ತನ್ನ ಸಭೆಯಲ್ಲಿ ಪರಿಗಣಿಸತಕ್ಕದ್ದು ಹಾಗೂ ಅದನ್ನು ಮಾರ್ಪಾಡುಗಳೊಡನೆ ಅಥವಾ ಮಾರ್ಪಾಡುಗಳಿಲ್ಲದೆ ಅನುಮೋದಿಸಬಹುದು.

(3) ಪ್ರಬಂಧಕ ಮಂಡಳಿಯು ಸೂಕ್ತವಾಗಿ ಅನುಮೋದಿಸಿದ ವಾರ್ಷಿಕ ವರದಿಯ ಒಂದು ಪ್ರತಿಯನ್ನು ಪ್ರತಿವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ಡಿಸೆಂಬರ್ 31ಕ್ಕೆ ಮೊದಲು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**53. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.–** (1) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕ ಪತ್ರ ಮತ್ತು ಜಮಾ ಖರ್ಚು ಪಟ್ಟಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯಕ್ಕೆ ಎಲ್ಲಾ ಮೂಲಗಳಿಂದ ಪ್ರಾಪ್ತವಾಗುವ ಅಥವಾ ಸ್ವೀಕರಿಸಲಾಗುವ ಎಲ್ಲಾ ನಿಧಿಗಳು ಹಾಗೂ ವಿತರಿಸಿದ ಅಥವಾ ಸಂದಾಯ ಮಾಡಿದ ಎಲ್ಲಾ ಮೊಬಲಗುಗಳನ್ನು ವಿಶ್ವವಿದ್ಯಾಲಯವು ನಿರ್ವಹಿಸುವ ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕಪತ್ರಗಳನ್ನು ಪ್ರತಿ ವರ್ಷವೂ ಭಾರತದ ಚಾರ್ಟೆಡ್ ಅಕೌಂಟೆಂಟ್‌ಗಳ ಸಂಸ್ಥೆಯ ಸದಸ್ಯರಾಗಿರುವ ಒಬ್ಬ ಲೆಕ್ಕಪರಿಶೋಧಕರಿಂದ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಲೆಕ್ಕಪರಿಶೋಧನಾ ವರದಿಯೊಡನೆ, ಪ್ರತಿ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ನವೆಂಬರ್ 30ಕ್ಕೆ ಮೊದಲು ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(4) ವಾರ್ಷಿಕ ಲೆಕ್ಕಪತ್ರಗಳು, ಜಮಾಖರ್ಚು ಪಟ್ಟಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಪ್ರಬಂಧಕ ಮಂಡಳಿಯು ತನ್ನ ಸಭೆಯಲ್ಲಿ ಪರ್ಯಾಲೋಚಿಸತಕ್ಕದ್ದು ಮತ್ತು ಪ್ರಬಂಧಕ ಮಂಡಳಿಯು ಅದನ್ನು ತನ್ನ ಅಭಿಪ್ರಾಯಗಳೊಡನೆ ಸಂದರ್ಶಕರಿಗೆ ಹಾಗೂ ಸರ್ಕಾರಕ್ಕೆ ಪ್ರತಿ ವರ್ಷದ ಡಿಸೆಂಬರ್ 31ಕ್ಕೆ ಮೊದಲು ಕಳುಹಿಸತಕ್ಕದ್ದು.

**54. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಮಿತಿಯ ಯಾವುದೇ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ ಅಥವಾ ಗೊತ್ತುವಳಿಯು ಅಥವಾ ವಿಶ್ವವಿದ್ಯಾಲಯದ ಸ್ವಾಧೀನದಲ್ಲಿರುವ ಇತರ ದಾಖಲೆಗಳು ಅಥವಾ ವಿಶ್ವವಿದ್ಯಾಲಯವು ಯುಕ್ತವಾಗಿ ನಿರ್ವಹಿಸುವ ಯಾವುದೇ ರಿಜಿಸ್ಟರ್‌ನಲ್ಲಿಯ ಯಾವುದೇ ನಮೂದುಗಳ ಪ್ರತಿಯನ್ನು, ಅದರ ಮೇಲೆ ಕುಲಸಚಿವರು ಪ್ರಮಾಣೀಕರಿಸಿದ್ದರೆ, ಅದನ್ನು ಅಂಥ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ, ಗೊತ್ತುವಳಿ ಅಥವಾ ದಾಖಲೆ ಅಥವಾ ರಿಜಿಸ್ಟರ್‌ನಲ್ಲಿ ಇರುವ ನಮೂದನ್ನು ಮೇಲ್ನೋಟದ ಸಾಕ್ಷ್ಯವೆಂಬುದಾಗಿ ಸ್ವೀಕರಿಸತಕ್ಕದ್ದು ಮತ್ತು ವಿಷಯಗಳ ಸಾಕ್ಷಿಯಾಗಿ ಅಂಗೀಕರಿಸತಕ್ಕದ್ದು ಹಾಗೂ ಮೂಲ ದಾಖಲೆಗಳನ್ನೇ ಸಲ್ಲಿಸಿದ್ದರೆ ಅದನ್ನು, ದಾಖಲಿಸಿರುವ ವಿಷಯಗಳು ಮತ್ತು ವಹಿವಾಟುಗಳ ಸಾಕ್ಷ್ಯವಾಗಿ ಅಂಗೀಕರಿಸಲಾಗುತ್ತಿತ್ತೋ, ಅದೇ ರೀತಿಯಲ್ಲಿ ಇವನ್ನೂ ಸಾಕ್ಷ್ಯವಾಗಿ ಅಂಗೀಕರಿಸತಕ್ಕದ್ದು.

**55. ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ.–** ರಾಜ್ಯಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಥವಾ ಅದರಲ್ಲಿ ಇರುವ ಯಾವುವೇ ಉಪಬಂಧಗಳನ್ನು ಅಥವಾ ಅದರಡಿಯಲ್ಲಿ ರಚಿಸಿದ ಯಾವುವೇ ನಿಯಮಗಳು ಅಥವಾ ಆದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿರ್ದೇಶನ ನೀಡುವುದು ಅವಶ್ಯವೆಂದು ಅಥವಾ ಉಚಿತವೆಂದು ಅಭಿಪ್ರಾಯಪಟ್ಟಲ್ಲಿ ಅದು ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ ಅಥವಾ ಸಂದರ್ಭಾನುಸಾರವಾಗಿ ವ್ಯವಸ್ಥಾಪನಾ ಮಂಡಳಿಯು ಅಂಥ ಪ್ರತಿಯೊಂದು ನಿರ್ದೇಶನವನ್ನು ಪಾಲಿಸತಕ್ಕದ್ದು.

**56. ದಂಡಗಳು.–** (1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿತವಾದ ನಿಯಮಗಳು ಉಪಬಂಧಗಳನ್ನು ಅಥವಾ ಯಾವುದೇ ಪರೀಕ್ಷಾ ವಿಷಯಗಳನ್ನು ಅಥವಾ ಪದವಿಗಳನ್ನು ನೀಡುವುದಕ್ಕೆ ಅಥವಾ ಅಂಕಪಟ್ಟಿಗಳನ್ನು ನೀಡುವುದಕ್ಕೆ ಸಂಬಂಧಪಟ್ಟ ವಿಷಯಗಳಲ್ಲಿ ಉಲ್ಲಂಘನೆಗಳನ್ನು ಮಾಡುವ ಯಾವೊಬ್ಬ ವ್ಯಕ್ತಿಯು, ಅಪರಾಧ ನಿರ್ಣಯವಾದ ಮೇಲೆ, ಐವತ್ತು ಸಾವಿರ ರೂಪಾಯಿಗಳಿಗೆ ಕಡಿಮೆಯಲ್ಲದ ಆದರೆ ಹತ್ತು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಆರು ತಿಂಗಳ ಅವಧಿಗಿಂತ ಕಡಿಮೆಯಲ್ಲದ ಆದರೆ ಎರಡು ವರ್ಷಗಳ ಅವಧಿಯವರೆಗೆ ವಿಸ್ತರಿಸಬಹುದಾದ ಕಾರಾವಾಸದಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು:

ಪರಂತು, ವಿಶ್ವವಿದ್ಯಾಲಯವೂ ಸಹ ಒಳಗೊಂಡಿರುವಲ್ಲಿ, ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಈ ಅಧಿನಿಯಮದ ಅಡಿಯಲ್ಲಿ ಮಂಜೂರು ಮಾಡಲಾದ ಅನುಮತಿ ಪತ್ರವನ್ನು ಹಿಂತೆಗೆದುಕೊಳ್ಳತಕ್ಕದ್ದು.

(2) ಈ ಪ್ರಕರಣದ ಅಡಿಯಲ್ಲಿನ ದಂಡವನ್ನು ಇತರ ಯಾವುದೇ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಲಾದ ದಂಡಕ್ಕೆ ಬಾಧಕವಾಗದಂತೆ ವಿಧಿಸಬಹುದು.

**57. ಪ್ರವೇಶಿಸುವ ಮತ್ತು ಪರಿಶೋಧಿಸುವ ಅಧಿಕಾರ.–** ಈ ಉದ್ದೇಶಕ್ಕಾಗಿ, ರಾಜ್ಯಸರ್ಕಾರದಿಂದ ಪ್ರಾಧಿಕೃತಗೊಂಡ 'ಎ' ಸಮೂಹದ ಅಧಿಕಾರಿ ದರ್ಜೆಗಿಂತ ಕಡಿಮೆಇಲ್ಲದ ದರ್ಜೆಯ ಯಾವೊಬ್ಬ ಅಧಿಕಾರಿಯು, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಶನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ 37) ಅಡಿಯಲ್ಲಿ ನಿರ್ದಿಷ್ಟಪಡಿಸಿರಬಹುದಾದ ಅಂಥ ಷರತ್ತುಗಳಿಗೆ ಒಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ, ಆ ಅಧಿನಿಯಮದ 9ನೇ ಪ್ರಕರಣದ ಅಡಿಯಲ್ಲಿ ಉಪಬಂಧಿಸಲಾದಂತಹವೇ ಅಧಿಕಾರಗಳನ್ನು ಚಲಾಯಿಸಲು ಮತ್ತು ಪ್ರಕಾರ್ಯಗಳನ್ನು ನೆರವೇರಿಸಲು ಅಧಿಕೃತನಾದ ಅಧಿಕಾರಿ ಎಂಬುದಾಗಿ ಭಾವಿಸತಕ್ಕದ್ದು.

**58. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ನಿರ್ದೇಶನವನ್ನು ನೀಡುವ ಅಧಿಕಾರ.–** (1) ವಿಶ್ವವಿದ್ಯಾಲಯವು ತನ್ನ ರಚನೆ ಅಥವಾ ನಿಗಮನವನ್ನು ನಿಯಂತ್ರಿಸುವ ಕಾನೂನಿಗೆ ಅನುಸಾರವಾಗಿ ತನ್ನ ಸಮಾಪನವನ್ನು ಉದ್ದೇಶಿಸಿದ್ದಲ್ಲಿ, ಅದು ಕನಿಷ್ಠ ಆರು ತಿಂಗಳ ಲಿಖಿತ ಪೂರ್ವ ಸೂಚನೆಯನ್ನು (ನೋಟಿಸು) ಸರ್ಕಾರಕ್ಕೆ ನೀಡತಕ್ಕದ್ದು.

(2) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಈ ಕೆಳಗಿನವುಗಳ ಬಗ್ಗೆ, ಎಂದರೆ:–

(i) ಪದವಿಯನ್ನು ನೀಡುವುದಕ್ಕಾಗಿ ಬೋಧನೆಯ ಗುಣಮಟ್ಟ;

(ii) ಶಿಕ್ಷಣದ ಗುಣಮಟ್ಟ;

(iii) ಉನ್ನತ ಶಿಕ್ಷಣದ ವ್ಯಾಪಾರೀಕರಣವನ್ನು ತಡೆಗಟ್ಟುವುದು;

(iv) ಅಧಿನಿಯಮದ ಉಪಬಂಧಗಳ ಉಲ್ಲಂಘನೆಯ ಬಗ್ಗೆ, ಯಾವುದಾದರೂ ಇದ್ದಲ್ಲಿ,

– ಇವುಗಳ ಬಗ್ಗೆ ನಿಯತಕಾಲಿಕ ಪರಿವೀಕ್ಷಣೆಯನ್ನು ನಡೆಸತಕ್ಕದ್ದು ಮತ್ತು ಸರ್ಕಾರಕ್ಕೆ ವರದಿಯನ್ನು ಕಳುಹಿಸತಕ್ಕದ್ದು.

(3) ದುರ್ವ್ಯವಹರಣೆ, ದುರಾಡಳಿತ ಮತ್ತು ಅಶಿಸ್ತು ಆಗಿದೆ ಎಂಬುದನ್ನು ಗುರುತಿಸಿದರೆ, ಸರ್ಕಾರವು, ವಿಶ್ವವಿದ್ಯಾಲಯದ ಆಡಳಿತವರ್ಗದವರಿಗೆ ಆಡಳಿತವನ್ನು ಸರಿಪಡಿಸಬೇಕೆಂದು ನಿರ್ದೇಶನಗಳನ್ನು ನೀಡತಕ್ಕದ್ದು. ನಿಯಮಿಸಬಹುದಾದ ಅಂಥ ಅವಧಿಯೊಳಗೆ ಆ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುವ ಹಕ್ಕು ಸರ್ಕಾರದಲ್ಲಿ ನಿಹಿತವಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ವಿಧಾನವು, ಸರ್ಕಾರವು ಈ ಸಂಬಂಧದಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು:

ಪರಂತು, ವಿಶ್ವವಿದ್ಯಾಲಯವು ತನ್ನ ಕಾರಣಗಳನ್ನು ಹೇಳಿಕೊಳ್ಳಲು ಸಮಂಜಸ ಅವಕಾಶಗಳನ್ನು ನೀಡಿದ ಹೊರತು ಅಂಥ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

(5) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೋಟಿಸನ್ನು ಸ್ವೀಕರಿಸಿದ ಮೇಲೆ, ಸರ್ಕಾರವು ಸಂಬಂಧಿಸಿದ ನಿಯಂತ್ರಣಾ ಪ್ರಾಧಿಕಾರದೊಡನೆ ಸಮಾಲೋಚಿಸಿ, ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ಅಥವಾ ವ್ಯಾಸಂಗ ಕ್ರಮವನ್ನು ಪರಿಸಮಾಪನಗೊಳಿಸಲು ಉದ್ದೇಶಿಸಿದ ದಿನಾಂಕದಿಂದ, ವಿಶ್ವವಿದ್ಯಾಲಯದಲ್ಲಿ ನಿಯತ ವ್ಯಾಸಂಗ ಕ್ರಮಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕೊನೆಯ ತಂಡ (ಬ್ಯಾಚ್) ತನ್ನ ವ್ಯಾಸಂಗ ಕ್ರಮವನ್ನು ಮುಗಿಸುವವರೆಗೆ ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು.

**59. ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು.–** (1) 58ನೇ ಪ್ರಕರಣದ (5)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ಅದರ ಆಡಳಿತಾತ್ಮಕ ವೆಚ್ಚಗಳನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ನೇಮಿಸಬಹುದಾದ ಅಂಥ ವಿಧಾನದಲ್ಲಿ ಭರಿಸತಕ್ಕದ್ದು.

(2) ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ವಿಶ್ವವಿದ್ಯಾಲಯದ ವೆಚ್ಚವನ್ನು ಭರಿಸಲು 47, 48, 49 ಮತ್ತು 50ನೇ ಪ್ರಕರಣಗಳ ಅಡಿಯಲ್ಲಿ ಉಲ್ಲೇಖಿಸಲಾದ ನಿಧಿಯು ಸಾಕಷ್ಟು ಇಲ್ಲದಿದ್ದಲ್ಲಿ, ಅಂಥ ವೆಚ್ಚವನ್ನು ಸರ್ಕಾರವು, ವಿಶ್ವವಿದ್ಯಾಲಯದ ಸ್ವತ್ತುಗಳು ಮತ್ತು ಆಸ್ತಿಗಳನ್ನು ವಿಲೇ ಮಾಡುವ ಮೂಲಕ ಭರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಸಮಾಪನೆಯು ದುರ್ವ್ಯವಹರಣೆ ಅಥವಾ ದುರಾಡಳಿತದ ಕಾರಣಗಳಿಗಾಗಿ ಆಗಿದ್ದರೆ, ಸರ್ಕಾರವು ಅಂಥ ದುರ್ವ್ಯವಹಾರಕ್ಕೆ ಅಥವಾ ದುರಾಡಳಿತಕ್ಕೆ ಹೊಣೆಯಾಗಿರುವ ವ್ಯಕ್ತಿಗಳನ್ನು ಗುರುತಿಸುವ ಮತ್ತು ಅವರ ಮೇಲೆ ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ದಂಡನೆಯನ್ನು ವಿಧಿಸಲು ಸ್ವತಂತ್ರವಾಗಿರತಕ್ಕದ್ದು.

**60. ತೊಂದರೆಗಳ ನಿವಾರಣೆಗೆ ಅಧಿಕಾರ.–** (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಅಥವಾ ಆದೇಶದ ಮೂಲಕ ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಐದು ವರ್ಷಗಳು ಮುಕ್ತಾಯವಾದ ತರುವಾಯ ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಅಧಿಸೂಚನೆ ಅಥವಾ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

**61. ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ.–** (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ಹೊರಡಿಸಲಾದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಉಭಯ ಸದನಗಳು ಒಪ್ಪಿದರೆ ತದನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ದತಿಯು ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವನ್ನು ಉಂಟುಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಜಿ.ಕೆ.ಬೋರೇಗೌಡ**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) (500 ಪ್ರತಿಗಳು)

R[illegible]o. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ


| | | |
|---|---|---|
| ಭಾಗ - IV-A | ಬೆಂಗಳೂರು, ಶುಕ್ರವಾರ, ಏಪ್ರಿಲ್ ೧೯, ೨೦೧೩ (ಚೈತ್ರ ೨೯, ಶಕ ವರ್ಷ ೧೯೩೫) | ನಂ.೬೯೯ |
| Part - IV-A | Bangalore, Friday, April 19, 2013 (Chaithra 29, Shaka Varsha 1935) | No. 699 |


ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಂವ್ಯಶಾಇ 13 ಶಾಸನ 2013, ಬೆಂಗಳೂರು, ದಿನಾಂಕ: 19.04.2013

ನ್ಯೂ ಬಾಲ್ಡ್‌ವಿನ್ ವಿಶ್ವವಿದ್ಯಾಲಯ ವಿಧೇಯಕ, 2013– ಇದಕ್ಕೆ 2013ರ ಮಾರ್ಚ್ ತಿಂಗಳ ಇಪ್ಪತ್ತೇಳನೇ ದಿನಾಂಕದಂದು ಘನತೆವೆತ್ತ ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2013ರ ಕರ್ನಾಟಕ ಅಧಿನಿಯಮ ಸಂಖ್ಯೆ:48 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

2013 ರ ಕರ್ನಾಟಕ ಅಧಿನಿಯಮ ಸಂಖ್ಯೆ: 48

(2013ರ ಏಪ್ರಿಲ್ ಮಾಹೆಯ ಹತ್ತೊಂಬತ್ತನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ನ್ಯೂ ಬಾಲ್ಡ್‌ವಿನ್ ವಿಶ್ವವಿದ್ಯಾಲಯ ಅಧಿನಿಯಮ, 2013

(2013ರ ಮಾರ್ಚ್ ಮಾಹೆಯ ಇಪ್ಪತ್ತೇಳನೇ ದಿನಾಂಕದಂದು ರಾಜ್ಯಪಾಲರ ಅನುಮತಿಯನ್ನು ಪಡೆಯಲಾಗಿದೆ)

ಸಾಮಾನ್ಯ, ತಾಂತ್ರಿಕ, ಆರೋಗ್ಯ, ವ್ಯವಸ್ಥಾಪನೆ, ಜೀವ ವಿಜ್ಞಾನ ಮತ್ತು ತತ್ಸಂಬಂಧಿ ವಲಯಗಳಲ್ಲಿ ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಉತ್ತೇಜಿಸಲು ಮತ್ತು ಕೈಗೊಳ್ಳಲು ಶ್ರೀ ಸತ್ಯನಾರಾಯಣ ಎಜುಕೇಷನಲ್ ಟ್ರಸ್ಟ್ ಮೂಲಕ ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದಕ್ಕಾಗಿ ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಸಾಮಾನ್ಯ, ತಾಂತ್ರಿಕ, ಆರೋಗ್ಯ, ವ್ಯವಸ್ಥಾಪನೆ, ಜೀವ ವಿಜ್ಞಾನಗಳು ಮತ್ತು ತತ್ಸಂಬಂಧಿ ವಲಯಗಳಲ್ಲಿ ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಉತ್ತೇಜಿಸಲು ಮತ್ತು ಕೈಗೊಳ್ಳಲು ಶ್ರೀ ಸತ್ಯನಾರಾಯಣ ಎಜುಕೇಷನಲ್ ಟ್ರಸ್ಟ್ ಮೂಲಕ ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ನಾಲ್ಕನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

### ಅಧ್ಯಾಯ - I

### ಪ್ರಾರಂಭಿಕ

**1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ನ್ಯೂ ಬಾಲ್ಡ್‌ವಿನ್ ಅಧಿನಿಯಮ, 2013 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. ಪರಿಭಾಷೆಗಳು.**– ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,–

(ಎ) "ಶೈಕ್ಷಣಿಕ ಪರಿಷತ್ತು (ಅಕೆಡೆಮಿಕ್ ಕೌನ್ಸಿಲ್)" ಎಂದರೆ, 25ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿಸಲಾದ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು;

(ಬಿ) "ಕಾರ್ಯಸೂಚಿ ವಿಷಯಗಳು", ಎಂದರೆ, ಪರಿನಿಯಮಗಳಲ್ಲಿ ಹೆಸರಿಸಬಹುದಾದ ಮತ್ತು ಒಂದು ಸಭೆಯಲ್ಲಿ ಆ ವಿಷಯಗಳನ್ನು ಮತ್ತು ಕಲಾಪಗಳನ್ನು ಅನುಮೋದಿಸಬಹುದೆಂದು ತಮ್ಮ ಸಮ್ಮತಿ ಸೂಚಿಸಿ ಕುಲಾಧಿಪತಿಯವರು ಮುಂಚಿತವಾಗಿಯೇ ಲಿಖಿತ ಅನುಮೋದನೆಯನ್ನು ಕೊಟ್ಟಿದ್ದಾಗ ಮಾತ್ರವೇ ಸಂದರ್ಭಾನುಸಾರ ಪ್ರಬಂಧಕರ ಮಂಡಳಿ ಅಥವಾ ವ್ಯವಸ್ಥಾಪನಾ ಮಂಡಳಿ ಅಥವಾ ಯಾವುದೇ ಸಮಿತಿಯವರು ಕಾರ್ಯಸೂಚಿಯಲ್ಲಿ ಸೇರಿಸಬಹುದಾದ ಅಥವಾ ಸಭೆಯಲ್ಲಿ ಚರ್ಚೆಗೆ ತೆಗೆದುಕೊಂಡು ನಿರ್ಣಯವನ್ನು ಕೊಡಬಹುದಾದ ಎಲ್ಲಾ ವಿಷಯಗಳು ಮತ್ತು ಕಲಾಪಗಳು;

(ಸಿ) "ಪ್ರಬಂಧಕರ ಮಂಡಳಿ" ಎಂದರೆ, 23ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಪ್ರಬಂಧಕರ ಮಂಡಳಿ;

(ಡಿ) "ವ್ಯವಸ್ಥಾಪನಾ ಮಂಡಳಿ" ಎಂದರೆ 24ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದಂತೆ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿ ;

(ಇ) "ಕುಲಾಧಿಪತಿ", "ಕುಲಪತಿ", "ಸಹಕುಲಪತಿ" ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ ಮತ್ತು ಸಹಕುಲಪತಿ;

(ಎಫ್) "ಕ್ಯಾಂಪಸ್" ಎಂದರೆ, ಅದು ಎಲ್ಲಾದರೂ ಇರಲಿ ವಿಶ್ವವಿದ್ಯಾಲಯವು ಸ್ಥಾಪಿಸಿದ, ನಿರ್ವಹಿಸುವ ಒಂದು ಕ್ಯಾಂಪಸ್;

(ಜಿ) "ಸಮಿತಿಗಳು" ಎಂದರೆ, ಈ ಅಧಿನಿಯಮದಡಿಯಲ್ಲಿ ರೂಪಿಸಲಾದ ಸಮಿತಿಗಳು ಅಥವಾ ಸಂದರ್ಭಾನುಸಾರವಾಗಿ ವಿಶ್ವವಿದ್ಯಾಲಯದ ವಿವಿಧ ಕಾರ್ಯಕರ್ತರು ರಚಿಸಿರುವ ಸಮಿತಿಗಳು ಮತ್ತು ಅದರಲ್ಲಿ ಶೋಧನಾ ಸಮಿತಿ, ನಾಮನಿರ್ದೇಶನ ಸಮಿತಿ, ಹಣಕಾಸು ಸಮಿತಿ, ಹಣಕಾಸು ಪರಿಷತ್ತು ಮತ್ತು ಅಂಥ ಇತರ ಸಮಿತಿಗಳು ಒಳಗೊಳ್ಳುತ್ತವೆ;

(ಎಚ್) "ಘಟಕ ಕಾಲೇಜು" ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುತ್ತಿರುವ ಒಂದು ಕಾಲೇಜು ಅಥವಾ ಸಂಸ್ಥೆ;

(ಐ) "ಹಣಕಾಸು ಸಮಿತಿ" ಎಂದರೆ, 27ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಹಣಕಾಸು ಸಮಿತಿ;

(ಜೆ) "ಸರ್ಕಾರ" ಎಂದರೆ, ಕರ್ನಾಟಕ ಸರ್ಕಾರ;

(ಕೆ) "ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳು" ಎಂದರೆ, ವಿಶ್ವವಿದ್ಯಾಲಯ ಅನುದಾನ ಆಯೋಗ, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು, ಭಾರತೀಯ ವೈದ್ಯಕೀಯ ಪರಿಷತ್ತು, ಭಾರತೀಯ ಔಷಧ ವಿಜ್ಞಾನ ಪರಿಷತ್ತು, ಭಾರತೀಯ ಕೃಷಿ ಸಂಶೋಧನಾ ಪರಿಷತ್ತು, ರಾಷ್ಟ್ರೀಯ ಮೌಲ್ಯಮಾಪನ ಮತ್ತು ಅಧಿಮಾನ್ಯತಾ ಪರಿಷತ್ತು, ರಾಷ್ಟ್ರೀಯ ಬೋಧಕ ಶಿಕ್ಷಣ ಪರಿಷತ್ತು, ದೂರಶಿಕ್ಷಣ ಪರಿಷತ್ತು, ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಪರಿಷತ್ತು ಮುಂತಾದ, ಉನ್ನತ ಶಿಕ್ಷಣದಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುವಂತೆ ನೋಡಿಕೊಳ್ಳುವುದಕ್ಕಾಗಿ ಗುಣಮಟ್ಟಗಳು ಮತ್ತು ಷರತ್ತುಗಳನ್ನು ವಿಧಿಸುವುದಕ್ಕಾಗಿ, ಕೇಂದ್ರ ಸರ್ಕಾರವು ಸ್ಥಾಪಿಸಿರುವ ಒಂದು ಸಂಸ್ಥೆ ಮತ್ತು ಇದರಲ್ಲಿ ಸರ್ಕಾರವೂ ಸೇರಿರುತ್ತದೆ;

(ಎಲ್) "ನಿಯಮಿಸಲಾದುದು" ಎಂದರೆ, ಈ ಅಧಿನಿಯಮದಡಿಯಲ್ಲಿ ಸರ್ಕಾರವು ರಚಿಸಲಾದ ನಿಯಮಗಳ ಮೂಲಕ ನಿಯಮಿಸಲಾದುದು;

(ಎಂ) "ಒಂದು ಘಟಕ ಕಾಲೇಜಿಗೆ ಸಂಬಂಧಪಟ್ಟಂತೆ ಪ್ರಾಂಶುಪಾಲರು" ಎಂದರೆ, ಘಟಕ ಕಾಲೇಜಿನ ಮುಖ್ಯಸ್ಥರು ಮತ್ತು ಪ್ರಾಂಶುಪಾಲರು ಇಲ್ಲದಿದ್ದಲ್ಲಿ ಅಥವಾ ನೇಮಕವಾದ ಪ್ರಾಂಶುಪಾಲರ ಗೈರುಹಾಜರಿಯಲ್ಲಿ, ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ತಾತ್ಕಾಲಿಕವಾಗಿ ನೇಮಕಗೊಂಡಿರುವ ಉಪಪ್ರಾಂಶುಪಾಲರು ಅಥವಾ ಯಾವುದೇ ಇತರ ವ್ಯಕ್ತಿಯೂ ಇದರಲ್ಲಿ ಒಳಗೊಳ್ಳುತ್ತಾರೆ;

(ಎನ್) "ಕುಲಸಚಿವರು" ಎಂದರೆ, ವಿಶ್ವವಿದ್ಯಾಲಯದ ಕುಲಸಚಿವರು;

(ಒ) "ಪ್ರಾದೇಶಿಕ ಕೇಂದ್ರ" ಎಂದರೆ, ಯಾವುದೇ ಪ್ರದೇಶದಲ್ಲಿನ ಅಧ್ಯಯನ ಕೇಂದ್ರಗಳ ಕಾರ್ಯವನ್ನು ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ಮಾಡುವ ಉದ್ದೇಶಕ್ಕಾಗಿ ಮತ್ತು ಅಂಥ ಕೇಂದ್ರಕ್ಕೆ ಕಾರ್ಯಕಾರಿ ಪರಿಷತ್ತು ವಹಿಸಿಕೊಡಬಹುದಾದ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸುವುದಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಅಥವಾ ನಿರ್ವಹಿಸಿಕೊಂಡುಬರುವ ಒಂದು ಕೇಂದ್ರ;

(ಪಿ) ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ "ಪ್ರಾಯೋಜಕ ಪ್ರಾಧಿಕಾರ" ಅಥವಾ "ಪ್ರಾಯೋಜಕ ಸಂಸ್ಥೆ" ಎಂದರೆ ಪ್ರಾಯೋಜಕ ನ್ಯಾಸ;

(ಕ್ಯೂ) "ರಾಜ್ಯ" ಎಂದರೆ, ಕರ್ನಾಟಕ ರಾಜ್ಯ;

(ಆರ್) "ಪರಿನಿಯಮಗಳು" ಮತ್ತು "ವಿನಿಯಮಗಳು" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಅನುಕ್ರಮವಾಗಿ ವಿಶ್ವವಿದ್ಯಾಲಯದ ಪರಿನಿಯಮಗಳು ಮತ್ತು ವಿನಿಯಮಗಳು;

(ಎಸ್) "ಅಧ್ಯಯನ ಕೇಂದ್ರ" ಎಂದರೆ, ವಿದ್ಯಾರ್ಥಿಗಳಿಗೆ ಅಗತ್ಯವಾದ ಬುದ್ಧಿವಾದ, ಸಲಹೆಗಳನ್ನು ನೀಡುವ ಅಥವಾ ಇತರ ಯಾವುದೇ ನೆರವನ್ನು ನೀಡುವ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಮತ್ತು ನಿರ್ವಹಿಸಿಕೊಂಡುಬಂದ ಒಂದು ಕೇಂದ್ರ;

(ಟಿ) "ಅಧ್ಯಾಪಕರು" ಎಂದರೆ, ಒಬ್ಬ ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಒಂದು ಘಟಕ ಕಾಲೇಜಿನಲ್ಲಿ ಬೋಧಿಸುವುದಕ್ಕೆ ಅಥವಾ ಸಂಶೋಧನೆ ನಡೆಸುವುದಕ್ಕೆ ಅಥವಾ ಸಂಶೋಧನೆಗೆ ಮಾರ್ಗದರ್ಶನ ನೀಡುವುದಕ್ಕೆ ನೇಮಕವಾದ ಅಂಥ ಇತರ ವ್ಯಕ್ತಿ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗವು ನಿಯಮಿಸಿದ ಗುಣಮಟ್ಟಗಳಿಗೆ ಅನುಸಾರವಾಗಿ ಇರುವ ಘಟಕ ಕಾಲೇಜಿನ ಪ್ರಾಂಶುಪಾಲರು ಇದರಲ್ಲಿ ಒಳಗೊಳ್ಳುತ್ತಾರೆ;

(ಯು) "ನ್ಯಾಸ" ಎಂದರೆ ಭಾರತೀಯ ನ್ಯಾಸ ಅಧಿನಿಯಮ, 1882ರ ಅಡಿಯಲ್ಲಿ ನೋಂದಣಿಯಾದ ಶ್ರೀ ಸತ್ಯನಾರಾಯಣ ಎಜುಕೇಷಲ್ ಟ್ರಸ್ಟ್ ;

(ವಿ) "ವಿಶ್ವವಿದ್ಯಾಲಯ ಅನುದಾನಗಳ ಆಯೋಗ" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) 4ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ಆಯೋಗ;

(ಡಬ್ಲ್ಯೂ) "ವಿಶ್ವವಿದ್ಯಾಲಯ" ಎಂದರೆ, ಈ ಅಧಿನಿಯಮದಡಿಯಲ್ಲಿ ಸ್ಥಾಪಿಸಿ ನಿಗಮಿತಗೊಳಿಸಲಾದ ನ್ಯೂ ಬಾಲ್ಡ್‌ವಿನ್ ವಿಶ್ವವಿದ್ಯಾಲಯ;

(ಎಕ್ಸ್) "ಸಂದರ್ಶಕರು" ಎಂದರೆ, 13ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ವಿಶ್ವವಿದ್ಯಾಲಯದ ಸಂದರ್ಶಕರು.

## ಅಧ್ಯಾಯ– II

## ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

**3. ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ.–** (1) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಹಕ್ಕನ್ನು ನ್ಯಾಸವು ಹೊಂದಿರತಕ್ಕದ್ದು.

(2) ನ್ಯಾಸವು ರಾಜ್ಯ ಸರ್ಕಾರಕ್ಕೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವವನ್ನು ಸಲ್ಲಿಸತಕ್ಕದ್ದು.

(3) ಪ್ರಸ್ತಾವವು ಈ ಮುಂದಿನ ವಿವರಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ನ್ಯಾಸದ ವಿವರಗಳೊಂದಿಗೆ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು;

(ii) ವಿಶ್ವವಿದ್ಯಾಲಯದ ವ್ಯಾಪ್ತಿ ಮತ್ತು ಸ್ಥಾನಮಾನ ಹಾಗೂ ಭೂಮಿಯ ಲಭ್ಯತೆ;

(iii) ಪ್ರಾರಂಭದ ದಿನಾಂಕದಿಂದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳಬೇಕೆಂದಿರುವ ಅಧ್ಯಯನ ಮತ್ತು ಸಂಶೋಧನಾ ಕಾರ್ಯಕ್ರಮಗಳ ಸ್ವರೂಪ ಮತ್ತು ಬಗೆಗಳು;

(iv) ಪ್ರಾರಂಭಿಸಬೇಕೆಂದು ಪ್ರಸ್ತಾಪಿಸಿರುವ ವ್ಯಾಸಂಗ ವಿಭಾಗಗಳು (ಫ್ಯಾಕಲ್ಟಿಗಳು), ಅಧ್ಯಯನ ಕ್ರಮಗಳು ಮತ್ತು ಸಂಶೋಧನೆಗಳ ಸ್ವರೂಪ;

(v) ಕಟ್ಟಡಗಳು, ಸಲಕರಣೆಗಳು ಮತ್ತು ರಚನಾ ಸೌಕರ್ಯಗಳನ್ನು ಒದಗಿಸುವಂಥ ಕ್ಯಾಂಪಸ್ ಅಭಿವೃದ್ಧಿ;

(vi) ಪ್ರಾರಂಭದ ದಿನಾಂಕದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಗಾಗಿ ಬಂಡವಾಳ ವೆಚ್ಚದ ಹಂತಗಳು;

(vii) ಬಾಬುವಾರು ಆವರ್ತಕ ವೆಚ್ಚ, ಆರ್ಥಿಕ ಮೂಲಗಳು ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ತಗಲುವ ಅಂದಾಜು ವೆಚ್ಚ;

(viii) ಸಂಪನ್ಮೂಲ ಸಂಗ್ರಹಣೆಗಾಗಿ ಯೋಜನೆ ಮತ್ತು ಅದಕ್ಕೆ ಬಂಡವಾಳದಿಂದ ತಗಲುವ ವೆಚ್ಚ ಹಾಗೂ ಪ್ರತಿಯೊಂದು ಮೂಲಕ್ಕೂ ಮರು ಸಂದಾಯ ಮಾಡುವ ರೀತಿ;

(ix) ವಿದ್ಯಾರ್ಥಿಗಳಿಂದ ಶುಲ್ಕ ವಸೂಲು ಮಾಡಿ ಆಂತರಿಕವಾಗಿ ನಿಧಿ ಸಂಗ್ರಹಿಸುವ ಯೋಜನೆ, ಸಲಹಾ ಸೇವೆ ಮತ್ತು ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಿಗೆ ಸಂಬಂಧಿಸಿದ ಇತರ ಚಟುವಟಿಕೆಗಳಿಂದ ನಿರೀಕ್ಷಿತ ವರಮಾನಗಳು ಮತ್ತು ಇತರ ನಿರೀಕ್ಷಿತ ವರಮಾನಗಳು;

(x) ಘಟಕವೊಂದಕ್ಕೆ ತಗಲುವ ವೆಚ್ಚದ ವಿವರಗಳು, ಆರ್ಥಿಕವಾಗಿ ದುರ್ಬಲವಾದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕ, ಉಚಿತ ಶಿಕ್ಷಣ (ಫ್ರಿಶಿಪ್) ಮತ್ತು ವಿದ್ಯಾರ್ಥಿ ವೇತನದಲ್ಲಿ ನೀಡುವ ರಿಯಾಯಿತಿ ಅಥವಾ ವಿನಾಯತಿಯ ಪರಿಮಿತಿಯ ವಿವರಗಳನ್ನು ಮತ್ತು ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳಿಗೆ ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳು ಪ್ರಾಯೋಜಿಸಿದ ವಿದ್ಯಾರ್ಥಿಗಳಿಗೆ ಮತ್ತು ಭಾರತವನ್ನುಳಿದು ಇತರ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ವಿಧಿಸತಕ್ಕ ಶುಲ್ಕದ ದರಗಳು ಬೇರೆ ಬೇರೆ ಇದ್ದಲ್ಲಿ ಅವುಗಳನ್ನು ಸೂಚಿಸುವ ಶುಲ್ಕ ರಚನೆಯ ವಿವರಗಳು;

(xi) ಸಂಬಂಧಪಟ್ಟ ವಿದ್ಯಾ ವಿಭಾಗದಲ್ಲಿ ಎಷ್ಟು ವರ್ಷಗಳ ಅನುಭವ ಮತ್ತು ಪರಿಣಿತಿಯನ್ನು ನ್ಯಾಸವು ದೊರಕಿಸಿಕೊಡಲಿದೆ ಹಾಗೂ ಅದರ ಹಣಕಾಸಿನ ಸಂಪನ್ಮೂಲಗಳು;

(xii) ವಿಶ್ವವಿದ್ಯಾಲಯದಲ್ಲಿರುವ ಅಧ್ಯಯನ ಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕಾಗಿ ಇರುವ ವ್ಯವಸ್ಥೆ;

(xiii) ವಿಶ್ವವಿದ್ಯಾಲಯವು ಸ್ಥಾಪನೆಯಾಗುವುದಕ್ಕೆ ಮೊದಲು ನೆರವೇರಿಸಬೇಕೆಂದು ರಾಜ್ಯ ಸರ್ಕಾರವು ಅಗತ್ಯಪಡಿಸಬಹುದಾದ ಅಂಥ ಇತರ ಷರತ್ತುಗಳ ನೆರವೇರಿಕೆಯ ಹಂತ.

(4) ಸ್ವೀಕರಿಸಿದ ಪ್ರಸ್ತಾವಗಳನ್ನು ಪರೀಕ್ಷಿಸಲು ರಾಜ್ಯ ಸರ್ಕಾರವು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಪದನಿಮಿತ್ತ ಸದಸ್ಯರಾದ ಮೂರು ಸದಸ್ಯರುಗಳನ್ನು ಒಳಗೊಂಡ ಒಂದು ಶೋಧನಾ ಸಮಿತಿಯನ್ನು ರಚಿಸತಕ್ಕದ್ದು ಮತ್ತು ಅದು ರಾಜ್ಯ ಸರ್ಕಾರಕ್ಕೆ ಶಿಫಾರಸ್ಸನ್ನು ಮಾಡತಕ್ಕದ್ದು.

**4. ವಿಶ್ವವಿದ್ಯಾಲಯದ ಸ್ಥಾಪನೆ.**– (1) ರಾಜ್ಯ ಸರ್ಕಾರವು ಶೋಧನಾ ಸಮಿತಿಯು ಮಾಡಿದ ಶಿಫಾರಸ್ಸುಗಳನ್ನು ಪರಿಶೀಲಿಸಿದ ತರುವಾಯ ಮತ್ತು ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ,–

(i) ನ್ಯಾಸವು ಸಾಕಷ್ಟು ಮೂಲ ಸೌಕರ್ಯದೊಂದಿಗೆ ವಿಶ್ವವಿದ್ಯಾಲಯವೊಂದನ್ನು ನಡೆಸಲು ಸಮರ್ಥವಾಗಿದೆ ಎಂದು ಅದು ಮನಗಂಡರೆ;

(ii) ಪ್ರದೇಶಕ್ಕನುಸಾರವಾಗಿ ಕೆಳಗೆ ನಿರ್ದಿಷ್ಟ ಪಡಿಸಿದ ವ್ಯಾಪ್ತಿಗೆ ಭೂಮಿಯ ಒಡೆತನವನ್ನು ಹೊಂದಿರತಕ್ಕದ್ದು, ಎಂದರೆ:–

(ಎ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯೊಳಗಿದ್ದರೆ ಇಪ್ಪತ್ತೈದು ಎಕರೆಗಳು;

(ಬಿ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯಿಂದ ಹೊರಗೆ ಇದ್ದು, ಆದರೆ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಪ್ರದೇಶದ ಒಳಗೆ ಇದ್ದರೆ ನಲವತ್ತು ಎಕರೆಗಳು;

(ಸಿ) ಭೂಮಿಯು (ಎ) ಮತ್ತು (ಬಿ) ಖಂಡಗಳಲ್ಲಿ ನಿರ್ದಿಷ್ಟಪಡಿಸಿದ ಸ್ಥಳಗಳನ್ನು ಹೊರತುಪಡಿಸಿದ್ದರೆ ಅರವತ್ತು ಎಕರೆಗಳಿಗಿಂತ ಕಡಿಮೆ ಇರತಕ್ಕದ್ದಲ್ಲ.

ಮೇಲೆ ನಿರ್ದಿಷ್ಟಪಡಿಸಿದ ಭೂಮಿಯು ಏಕ ಘಟಕ (ಸಿಂಗಲ್ ಬ್ಲಾಕ್) ದಲ್ಲಿರತಕ್ಕದ್ದು ಮತ್ತು ಇದು ಸಂಬಂಧಪಟ್ಟ ನ್ಯಾಸ/ಪ್ರತಿಷ್ಠಾನ/ಸಂಸ್ಥೆ/ವಿಶ್ವವಿದ್ಯಾಲಯದ ಹೆಸರಿನಲ್ಲಿರತಕ್ಕದ್ದು. 3ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ಅಗತ್ಯಪಡಿಸಲಾದಂತೆ ಒದಗಿಸಿದ ವಿವರಗಳ ಆಧಾರದ ಮೇಲೆ ಸರ್ಕಾರವು 47ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಬೇಕೆಂದು ನ್ಯಾಸಕ್ಕೆ ನಿರ್ದೇಶನ ನೀಡಬಹುದು.

(2) ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಸ್ಥಾಪನೆಯ ತರುವಾಯ, ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, "ನ್ಯೂ ಬಾಲ್ಡ್‌ವಿನ್ ವಿಶ್ವವಿದ್ಯಾಲಯ" ಎಂಬ ಹೆಸರಿನ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ರಾಜ್ಯದಲ್ಲಿ ಸ್ಥಾಪಿಸುವುದಕ್ಕೆ ಮಂಜೂರಾತಿಯನ್ನು ನೀಡಬಹುದು.

(3) ವಿಶ್ವವಿದ್ಯಾಲಯದ ಕೇಂದ್ರ ಕಾರ್ಯಸ್ಥಾನವು ಬೆಂಗಳೂರಿನಲ್ಲಿ ಇರತಕ್ಕದ್ದು. ವಿಶ್ವವಿದ್ಯಾಲಯವು ತನ್ನ ಕ್ಯಾಂಪಸ್ಸುಗಳನ್ನು ಅಥವಾ ಪ್ರಾದೇಶಿಕ ಕೇಂದ್ರಗಳನ್ನು, ಅಧ್ಯಯನ ಕೇಂದ್ರಗಳನ್ನು ಕರ್ನಾಟಕದ ಯಾವುದೇ ಭಾಗದಲ್ಲಿ ಹೊಂದಿರತಕ್ಕದ್ದು ಮತ್ತು ಆ ಬಗ್ಗೆ ರಾಜ್ಯ ಸರ್ಕಾರದ ಪೂರ್ವಾನುಮತಿಯನ್ನು ಪಡೆದುಕೊಳ್ಳುವುದಕ್ಕೊಳಪಟ್ಟು ಹಾಗೂ ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗನುಸಾರವಾಗಿ ಹೊಂದಿರತಕ್ಕದ್ದು.

(4) ಮೊದಲ ಕುಲಾಧಿಪತಿಯವರು, ಮೊದಲ ಕುಲಪತಿಯವರು, ಪ್ರಬಂಧಕ ಮಂಡಳಿಯ ಮೊದಲ ಸದಸ್ಯರುಗಳು, ವ್ಯವಸ್ಥಾಪನಾ ಮಂಡಳಿಯ ಹಾಗೂ ಶೈಕ್ಷಣಿಕ ಪರಿಷತ್ತಿನ ಮೊದಲ ಸದಸ್ಯರುಗಳು ಮತ್ತು ಇನ್ನು ಮುಂದೆ, ಅಂಥ ಅಧಿಕಾರಿಗಳು ಅಥವಾ ಸದಸ್ಯರುಗಳಾಗಬಹುದಾದಂಥ ಎಲ್ಲಾ ವ್ಯಕ್ತಿಗಳು, ಅಂಥ ಪದ ಅಥವಾ ಸದಸ್ಯತ್ವವನ್ನು ಹೊಂದಿರುವುದು ಮುಂದುವರೆಯುವವರೆಗೆ, ಒಂದು ನಿಗಮಿತ ನಿಕಾಯವನ್ನು ರಚಿಸತಕ್ಕದ್ದು. ಮತ್ತು ಅದು ವಿಶ್ವವಿದ್ಯಾಲಯದ ಹೆಸರಿನಲ್ಲಿ ದಾವೆ ಹೂಡಬಹುದು ಮತ್ತು ದಾವೆಗೊಳಗಾಗಬಹುದು.

(5) (2)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯವು ಸ್ಥಾಪನೆಗೆ ಮಂಜೂರಾತಿಯಾದ ಮೇಲೆ, ವಿಶ್ವವಿದ್ಯಾಲಯದ ಉದ್ದೇಶಕ್ಕಾಗಿ, ನ್ಯಾಸವು ಆರ್ಜಿಸಿದ, ಸೃಜಿಸಿದ, ಏರ್ಪಾಟು ಮಾಡಿಕೊಂಡ ಅಥವಾ ಕಟ್ಟಲ್ಪಟ್ಟ ಭೂಮಿ ಮತ್ತು ಇತರ ಸ್ಥಿರ ಮತ್ತು ಚರ ಸ್ವತ್ತು, ವಿಶ್ವವಿದ್ಯಾಲಯದಲ್ಲಿ ನಿಹಿತವಾಗಿರತಕ್ಕದ್ದು.

(6) ವಿಶ್ವವಿದ್ಯಾಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದ ಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂಥ ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

(7) ವಿಶ್ವವಿದ್ಯಾಲಯದಲ್ಲಿನ ಭೂಮಿ, ಕಟ್ಟಡ ಮತ್ತು ಇತರ ಸ್ವತ್ತುಗಳನ್ನು ವಿಶ್ವವಿದ್ಯಾಲಯದ ಉದ್ದೇಶಗಳಿಗೆ ಆನುಷಂಗಿಕವಾಗಿರುವುದನ್ನು ಹೊರತುಪಡಿಸಿ ಇತರ ಯಾವುದೇ ಉದ್ದೇಶಕ್ಕಾಗಿ ಬಳಸತಕ್ಕದ್ದಲ್ಲ.

**5. ಅನುದಾನಗಳು ಮತ್ತು ಹಣಕಾಸು ನೆರವು.–** ವಿಶ್ವವಿದ್ಯಾಲಯವು ಸ್ವಂತ ಧನಮೂಲ ಉಳ್ಳದ್ದಾಗಿರತಕ್ಕದ್ದು ಮತ್ತು ರಾಜ್ಯದಿಂದ ಅಥವಾ ರಾಜ್ಯದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಇತರ ಸಂಸ್ಥೆ ಅಥವಾ ನಿಗಮದಿಂದ ಯಾವುದೇ ನಿರ್ವಹಣಾ ಸಹಾಯ ಅನುದಾನ ಅಥವಾ ಯಾವುದೇ ಹಣಕಾಸು ನೆರವನ್ನು ಹಕ್ಕಿನಿಂದ ಕೇಳತಕ್ಕದ್ದಲ್ಲ ಅಥವಾ ಅದನ್ನು ಪಡೆಯಲು ಹಕ್ಕನ್ನು ಹೊಂದಿರತಕ್ಕದ್ದಲ್ಲ:

ಪರಂತು, ರಾಜ್ಯವು,–

(ಎ) ಇತರ ರಾಜ್ಯ ಸರ್ಕಾರದ ಸಂಘಟನೆಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿರುವಂಥದ್ದೇ ಸಂಶೋಧನೆ, ಅಭಿವೃದ್ಧಿ ಮತ್ತಿತರ ಚಟುವಟಿಕೆಗಳಿಗಾಗಿ; ಅಥವಾ

(ಬಿ) ಸರ್ಕಾರದಿಂದ ನೆರವನ್ನು ಪಡೆಯುವ ಯಾವುದೇ ನಿರ್ದಿಷ್ಟ ಸಂಶೋಧನೆ ಅಥವಾ ಕಾರ್ಯಕ್ರಮಗಳಿಗಾಗಿ; ಮತ್ತು

(ಸಿ) ರಾಜ್ಯ ಕಾರ್ಯನೀತಿಯ ಬದಲಾವಣೆಗೆ ಒಳಪಟ್ಟು ಅಥವಾ ಅನ್ಯಥಾ ಇದೇ ಬಗೆಯ ವಿಶ್ವವಿದ್ಯಾಲಯಗಳಿಗೆ ಅವಕಾಶವನ್ನು ಕಲ್ಪಿಸುವುದಕ್ಕೆ ಅಥವಾ ಅವುಗಳ ಪ್ರಯೋಜನಕ್ಕಾಗಿ,

– ಅನುದಾನದ ಮೂಲಕ ಅಥವಾ ಅನ್ಯಥಾ ಹಣಕಾಸು ಬೆಂಬಲವನ್ನು ಒದಗಿಸಬಹುದು:

ಮತ್ತು ಪರಂತು, ವಿಶ್ವವಿದ್ಯಾಲಯವು, ಯಾವುದೇ ಇತರ ಮೂಲದಿಂದ ಯಾವುದೇ ಆರ್ಥಿಕ ನೆರವನ್ನು ಸ್ವೀಕರಿಸಬಹುದು.

**6. ಘಟಕ ಕಾಲೇಜು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಅಥವಾ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದಕ್ಕೆ ಅಧಿಕಾರ.–** ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಐದು ವರ್ಷಗಳನ್ನು ಪೂರ್ಣಗೊಳಿಸಿದ ನಂತರ, ವಿಶ್ವವಿದ್ಯಾಲಯ ಅನುದಾನ ಆಯೋಗದ ಮತ್ತು ಇತರ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ಗುಣಮಟ್ಟಗಳಿಗೆ ಒಳಪಟ್ಟು, ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ, ವಿಶ್ವವಿದ್ಯಾಲಯವು, ರಾಜ್ಯದಲ್ಲಿ ತನಗೆ ಸೂಕ್ತವೆನಿಸುವಂಥ ಸ್ಥಳಗಳಲ್ಲಿ ಘಟಕ ಕಾಲೇಜುಗಳು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದಿರಬಹುದು.

**7. ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು.–** ವಿಶ್ವವಿದ್ಯಾಲಯವು, ತನ್ನ ಭವಿಷ್ಯದ್‌ದೃಷ್ಟಿ ಮತ್ತು ಧ್ಯೇಯೋದ್ದೇಶಗಳನ್ನು ಸಾಧಿಸಲು ಈ ಮುಂದಿನಂತೆ ವಿವಿಧ ಬಗೆಯ ಕಾರ್ಯತಂತ್ರಗಳನ್ನು ಕೈಗೊಳ್ಳಬಹುದು:–

(i) ತಾಂತ್ರಿಕತೆ, ಆರೋಗ್ಯ, ವ್ಯವಸ್ಥಾಪನೆ, ಜೀವ ವಿಜ್ಞಾನಗಳು ಮತ್ತು ಸಂಬಂಧಿತ ವಲಯಗಳಲ್ಲಿ ಸ್ನಾತಕೋತ್ತರ, ಡಾಕ್ಟೊರಲ್ ಮತ್ತು ಪೋಸ್ಟ್ ಡಾಕ್ಟೊರಲ್ ಕೋರ್ಸುಗಳಿಗೆ ಮುಂದುವರಿಯುವ ಮತ್ತು ಅವುಗಳನ್ನು ಒಳಗೊಳ್ಳುವ ವಿಶ್ವವಿದ್ಯಾಲಯ ಶಿಕ್ಷಣದಲ್ಲಿ ಪ್ರಗತಿಯನ್ನು ಮತ್ತು ಅನ್ವೇಷಣೆಯನ್ನು ಬೆಂಬಲಿಸುವುದು, ಪ್ರೋತ್ಸಾಹಿಸುವುದು ಮತ್ತು ಕೈಗೊಳ್ಳುವುದು ಹಾಗೂ ಈ ಕ್ಷೇತ್ರಗಳಲ್ಲಿ ಸಲಹೆಯನ್ನೂ ಒಳಗೊಂಡಂತೆ ಸಂಶೋಧನೆ, ಪ್ರಗತಿ ಮತ್ತು ಪ್ರಸಾರಕ್ಕೆ ಅವಕಾಶವನ್ನು ಕಲ್ಪಿಸುವುದು;

(ii) ವಿದ್ಯಾರ್ಥಿಗಳಿಗೆ, ಬೋಧಕ ವೃಂದದ (ಫ್ಯಾಕಲ್ಟಿ) ಸದಸ್ಯರಿಗೆ ಮತ್ತು ಇತರರಿಗೆ ನಿರ್ದಿಷ್ಟ ಶೈಕ್ಷಣಿಕ ಮತ್ತು ಸಂಶೋಧನಾ ಕಾರ್ಯಕ್ರಮಗಳನ್ನು, ತರಬೇತಿ ಕಾರ್ಯಕ್ರಮಗಳನ್ನು ಮತ್ತು ವಿನಿಮಯ ಕಾರ್ಯಕ್ರಮಗಳನ್ನು ಪರಿಕಲ್ಪಿಸಲು, ವಿನ್ಯಾಸಗೊಳಿಸಲು, ಅಭಿವೃದ್ಧಿಪಡಿಸಲು ಇತರ ಯಾವುದೇ ವಿಶ್ವವಿದ್ಯಾಲಯಗಳು, ಸಂಶೋಧನಾ ಸಂಸ್ಥೆಗಳು, ಲಾಭರಹಿತ ಸಂಸ್ಥೆಗಳು, ಕೈಗಾರಿಕಾ ಸಂಸ್ಥೆಗಳು, ವೃತ್ತಿಪರ ಸಂಸ್ಥೆಗಳು ಅಥವಾ ಇತರ ಸಂಸ್ಥೆಗಳೊಂದಿಗೆ ಸಹಯೋಗವನ್ನು ಹೊಂದುವುದು;

(iii) ರಾಜ್ಯ ಸರ್ಕಾರದ ಪೂರ್ವ ಅನುಮೋದನೆಯೊಡನೆ, ಯಾವುದೇ ಸಂಸ್ಥೆಯೊಂದಿಗೆ ಸಹಯೋಗ ಹೊಂದಿ ಸಂಶೋಧನೆಯನ್ನು ಮತ್ತು ಹೊಸತನವನ್ನು ಬೆಳಕಿಗೆ ತರುವುದು;

(iv) ತಾನು ಸೂಕ್ತವೆಂದು ಭಾವಿಸಬಹುದಾದಂತೆ, ಕಲಿಕೆಯ ಅಂಥ ಶಾಖೆಗಳಲ್ಲಿ ಬೋಧನಾ ಮತ್ತು ಸಂಶೋಧನಾ ಸೌಲಭ್ಯಗಳನ್ನು ಒದಗಿಸಿ ಜ್ಞಾನ ಪ್ರಸಾರ ಮಾಡುವುದು ಮತ್ತು ಅದನ್ನು ಮುಂದುವರೆಸುವುದು ಹಾಗೂ ವಿಶೇಷವಾಗಿ ತಾಂತ್ರಿಕ, ಆರೋಗ್ಯ, ವ್ಯವಸ್ಥಾಪನೆ, ಜೀವ ವಿಜ್ಞಾನಗಳು ಮತ್ತು ಸಂಬಂಧಿತ ಕೋರ್ಸುಗಳಲ್ಲಿ ಸಮಗ್ರ ವ್ಯಾಸಂಗ ವಿಷಯಗಳಿಗಾಗಿ ವಿಶೇಷ ಉಪಬಂಧ ಕಲ್ಪಿಸುವುದು ಮತ್ತು ವಿಶ್ವವಿದ್ಯಾಲಯದಲ್ಲಿ ಅಂತರವಿದ್ಯಾವಿಷಯಗಳ ಅಧ್ಯಯನ ಮತ್ತು ಸಂಶೋಧನೆಗೆ ಉತ್ತೇಜನ ನೀಡುವುದಕ್ಕಾಗಿ ಸೂಕ್ತ ಕ್ರಮ ಕೈಗೊಳ್ಳುವುದು;

(v) ಇಂಜಿನಿಯರಿಂಗ್ ಪರಿಹಾರಗಳನ್ನೊದಗಿಸುವ ಭವಿಷ್ಯದ ಸಮರ್ಥವಾದ ತಾಂತ್ರಿಕತೆಗಳ ಸಂಶೋಧನೆಯೊಂದಿಗೆ ಮತ್ತು ತಾಂತ್ರಿಕ ವ್ಯವಹಾರ ಮತ್ತು ಬೆಳೆಯುತ್ತಿರುವ ತಾಂತ್ರಿಕತೆಗೆ ಬೆಂಬಲದೊಂದಿಗೆ ಉನ್ನತ ತಾಂತ್ರಿಕ ಮತ್ತು ವೃತ್ತಿಪರ ಕೈಗಾರಿಕೆಗಳ ಬೇಡಿಕೆಗಳನ್ನು ಈಡೇರಿಸುವುದು;

(vi) ಉನ್ನತ ಕಲಿಕೆಗೆ ಪ್ರವೇಶಾವಕಾಶಗಳನ್ನು ಮತ್ತು ನ್ಯಾಯಸಮ್ಮತತೆಗೆ ಉತ್ತೇಜನ ನೀಡುವ ದೃಷ್ಟಿಯಿಂದ, ಕಲಿಕೆಯ ವಿಧಾನಗಳು ಮತ್ತು ಸ್ಥಳಗಳು, ವ್ಯಾಸಂಗ ಕ್ರಮಗಳ ಸಂಯೋಜನೆ, ದಾಖಲಾತಿಗಾಗಿ ಅರ್ಹತೆ, ಪ್ರವೇಶದ

ವಯಸ್ಸು, ಪರೀಕ್ಷೆಯನ್ನು ನಡೆಸುವುದು ಮತ್ತು ಕಾರ್ಯಕ್ರಮಗಳ ನಿರ್ವಹಣೆಗೆ ಸಂಬಂಧಿಸಿದಂತೆ ನಮ್ಯವಾದ (ಫ್ಲೆಕ್ಸಿಬಲ್) ಮತ್ತು ಮುಕ್ತವಾದ, ವಿಶ್ವವಿದ್ಯಾಲಯ ಮಟ್ಟದ ಶಿಕ್ಷಣದ ಅನ್ವೇಷಣಾ ಪದ್ಧತಿಯನ್ನು ಅಳವಡಿಸುವುದು ಹಾಗೂ ಜ್ಞಾನದ ಹೊಸ ಕ್ಷೇತ್ರಗಳಲ್ಲಿ ಉತ್ಕೃಷ್ಟತೆಗೆ ಪ್ರೋತ್ಸಾಹಿಸುವುದು, ಶೈಕ್ಷಣಿಕ ಮತ್ತು ಸಮನ್ವಯ ಕಲಿಕೆ, ಇವೆರಡಕ್ಕೂ ಸಮನಾದ ಪ್ರಾಮುಖ್ಯತೆಯನ್ನು ನೀಡುವುದು;

(vii) ಗುಣಮಟ್ಟದ ಶಿಕ್ಷಣಕ್ಕಾಗಿ ಕೊಡುಗೆಯನ್ನು ನೀಡಲು ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಸಂಪನ್ಮೂಲ ಕೇಂದ್ರಗಳನ್ನು ಅಭಿವೃದ್ಧಿಪಡಿಸುವುದು;

(viii) ಕರ್ನಾಟಕದಲ್ಲಿ ವಿವಿಧ ಸ್ಥಳಗಳಲ್ಲಿ ಕ್ಯಾಂಪಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳು ಮತ್ತು ಸಂಯೋಜಿತ ಕಾಲೇಜುಗಳನ್ನು ಸ್ಥಾಪಿಸುವುದು ಮತ್ತು ತಾಂತ್ರಿಕತೆ, ವೃತ್ತಿಪರತೆ, ಸಾಮಾನ್ಯ ಶಿಕ್ಷಣ ಮತ್ತು ಸಮಾಜ ಮತ್ತು ಮಾನವ ಅಭಿವೃದ್ಧಿಯಲ್ಲಿ ಶೈಕ್ಷಣಿಕ ಬದಲಾವಣೆಗೆ ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಕೊಡುಗೆ ನೀಡುವುದು ಮತ್ತು ಜ್ಞಾನವನ್ನು ಅಭಿವೃದ್ಧಿಪಡಿಸುವುದು;

(ix) ಮೌಲ್ಯಮಾಪನದ ವಿವಿಧ ಆಧುನಿಕ ವಿಧಾನಗಳ ಮೂಲಕ ಮಾಡಿದ ಮೌಲ್ಯಮಾಪನಕ್ಕೆ ಅನುಸಾರವಾಗಿ ಶಿಕ್ಷಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದುದರ ಆಧಾರದ ಮೇಲೆ ನೀಡಲು ಪದವಿಗಳನ್ನು, ಡಿಪ್ಲೋಮೋಗಳನ್ನು, ಪ್ರಮಾಣಪತ್ರಗಳನ್ನು ಮತ್ತು ಯಶೋಪತ್ರ ಪ್ರದಾನದಂಥ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(x) ಉಪನ್ಯಾಸ ಮಾಲಿಕೆಗಳು, ವಿಚಾರ ಸಂಕಿರಣಗಳು, ಸಮ್ಮೇಳನಗಳು, ಕಾರ್ಯಾಗಂಗ ಶಿಕ್ಷಣ ಕಾರ್ಯಕ್ರಮಗಳು, ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳು, ಪ್ರಕಟಣೆಗಳು ಮತ್ತು ತರಬೇತಿ ಕಾರ್ಯಕ್ರಮಗಳು ಮತ್ತು ಕಾರ್ಯಸೂಚಿಗಳ ಮೂಲಕ ಜ್ಞಾನ ಪ್ರಸಾರ ಮಾಡುವುದು ಮತ್ತು ಶಿಕ್ಷಣ ಮತ್ತು ತತ್ಸಂಬಂಧಿತ ಅಭಿವೃದ್ಧಿ ಕ್ಷೇತ್ರಗಳ ವಿಷಯಗಳ ಬಗ್ಗೆ ಸಾರ್ವಜನಿಕ ಚರ್ಚೆಯನ್ನು ಏರ್ಪಡಿಸುವುದು;

(xi) ರಾಜ್ಯ ಸರ್ಕಾರದ ಪೂರ್ವ ಅನುಮತಿಯೊಂದಿಗೆ, ಉತ್ತಮ ಗುಣಮಟ್ಟದ ಇತರ ಯಾವುವೇ ವಿಶ್ವವಿದ್ಯಾಲಯಗಳೊಂದಿಗೆ ಸಹಭಾಗಿಗಳಾಗಿ ವಿಶ್ವವಿದ್ಯಾಲಯದ ಬೋಧಕ ವೃಂದ (ಫ್ಯಾಕಲ್ಟಿ) ಮತ್ತು ಸಂಶೋಧಕರ ಅಭಿವೃದ್ಧಿ ಮತ್ತು ತರಬೇತಿಗಾಗಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು;

(xii) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದಕ್ಕಾಗಿ ಮತ್ತು ಉತ್ತೇಜಿಸುವುದಕ್ಕಾಗಿ ಅವಶ್ಯಕವಾದ ಮತ್ತು ಯುಕ್ತವಾದ ಕ್ರಮಗಳನ್ನು ಕೈಗೊಳ್ಳುವುದು;

(xiii) ಭಾರತದಲ್ಲಿ ಶಿಕ್ಷಣ ಮತ್ತು ಇತರ ಅಭಿವೃದ್ಧಿ ವಲಯಗಳನ್ನು ವಿಸ್ತರಿಸುವುದಕ್ಕಾಗಿ ಸರ್ಕಾರವು ಅನುಮೋದಿಸಬಹುದಾದಂತೆ ಯಾವುವೇ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದು.

**8. ವಿಶ್ವವಿದ್ಯಾಲಯದ ಅಧಿಕಾರಗಳು.–** ವಿಶ್ವವಿದ್ಯಾಲಯವು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗೆ ಅನುಸಾರವಾಗಿ ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿರ್ಧರಿಸಬಹುದಾದಂತೆ ಕ್ಯಾಂಪಸ್ಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಕರ್ನಾಟಕದಲ್ಲಿ ಸ್ಥಾಪಿಸುವುದು ಮತ್ತು ನಿರ್ವಹಿಸುವುದು;

(ii) ವಿಶ್ವವಿದ್ಯಾಲಯದ ಉದ್ದೇಶವನ್ನು ಕಾರ್ಯರೂಪಕ್ಕೆ ತರುವಲ್ಲಿ ಅಗತ್ಯವಾಗಬಹುದಾದ ಅಥವಾ ಕಾರ್ಯಸಾಧ್ಯವಾಗಬಹುದಾದ ಎಲ್ಲಾ ಅಂಥ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು;

(iii) ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಮತ್ತು ಷರತ್ತುಗಳಿಗೊಳಪಟ್ಟು ಪದವಿಗಳು ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರದಾನಮಾಡುವುದು;

(iv) ಪರಿನಿಯಮಗಳನ್ವಯ ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿ ವೇತನಗಳು ಮತ್ತು ಬಹುಮಾನಗಳು, ಅವಾರ್ಡುಗಳು, ಪಾರಿತೋಷಕಗಳು ಇತ್ಯಾದಿಗಳನ್ನು ಸ್ಥಾಪಿಸುವುದು ಮತ್ತು ನೀಡುವುದು;

(v) ಪರಿನಿಯಮಗಳಲ್ಲಿ ಅಥವಾ ಸಂದರ್ಭಾನುಸಾರವಾಗಿ ನಿಯಮಗಳಲ್ಲಿ ನಿಗದಿಪಡಿಸಬಹುದಾದ ಅಂಥ ಶುಲ್ಕಗಳು, ಬಿಲ್ಲುಗಳು, ಖರೀದಿ ಪಟ್ಟಿಗಳನ್ನು ಕೇಳಿಪಡೆದುಕೊಳ್ಳುವುದು ಮತ್ತು ಸ್ವೀಕರಿಸುವುದು ಹಾಗೂ ಚಾರ್ಜುಗಳನ್ನು ವಸೂಲು ಮಾಡುವುದು;

(vi) ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಪಠ್ಯೇತರ ಚಟುವಟಿಕೆಗಳಿಗೆ ಅವಕಾಶಗಳನ್ನು ಕಲ್ಪಿಸುವುದು;

(vii) ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಕ್ಯಾಂಪಸುಗಳ, ಪ್ರಾದೇಶಿಕ ಕೇಂದ್ರಗಳ, ಅಧ್ಯಯನ ಕೇಂದ್ರಗಳ ಫ್ಯಾಕಲ್ಟಿ, ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವುದು;

(viii) ವಿಶ್ವವಿದ್ಯಾಲಯದ ಅಥವಾ ಒಂದು ಘಟಕ ಕಾಲೇಜಿನ ಅಥವಾ ಕ್ಯಾಂಪಸ್ಸಿನ, ಪ್ರಾದೇಶಿಕ ಕೇಂದ್ರದ, ಅಧ್ಯಯನ ಕೇಂದ್ರದ ಉದ್ದೇಶಕ್ಕಾಗಿ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದಿರುವ, ಯಾವುದೇ ರೀತಿಯ ಸ್ವಯಂ ದೇಣಿಗೆಗಳು ಮತ್ತು ಕೊಡುಗೆಗಳನ್ನು ಸ್ವೀಕರಿಸುವುದು ಮತ್ತು ನ್ಯಾಸ ಮತ್ತು ದತ್ತಿ

ಸ್ವತ್ತುಗಳೂ ಸೇರಿದಂತೆ, ಯಾವುದೇ ಚರ ಅಥವಾ ಸ್ಥಿರ ಸ್ವತ್ತನ್ನು ಆರ್ಜಿಸುವುದು, ಹೊಂದಿರುವುದು, ನಿರ್ವಹಿಸುವುದು, ನಡೆಸುವುದು ಮತ್ತು ಹಸ್ತಾಂತರ ಮಾಡುವುದು;

(ix) ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸಿಕೊಂಡು ಬರುವುದು ಹಾಗೂ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ ವಿದ್ಯಾರ್ಥಿಗಳಿಗೆ ವಸತಿ ಸ್ಥಳಗಳಾಗಿ ಮಾನ್ಯತೆ ನೀಡುವುದು;

(x) ವಸತಿಯ ಮೇಲ್ವಿಚಾರಣೆ ಮಾಡುವುದು ಮತ್ತು ನಿಯಂತ್ರಣ ಮಾಡುವುದು ಹಾಗೂ ವಿದ್ಯಾರ್ಥಿಗಳು ಮತ್ತು ಎಲ್ಲಾ ಪ್ರವರ್ಗಗಳ ಸಿಬ್ಬಂದಿಗಳಲ್ಲಿ ಶಿಸ್ತು ನಿಯಂತ್ರಣ ಮಾಡುವುದು ಮತ್ತು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ನಡತೆ ಸಂಹಿತೆಯನ್ನು ರೂಪಿಸುವುದೂ ಒಳಗೊಂಡಂತೆ, ಅಂಥ ಸಿಬ್ಬಂದಿಗಳ ಸೇವಾಷರತ್ತುಗಳನ್ನು ನಿರೂಪಿಸುವುದು;

(xi) ಶೈಕ್ಷಣಿಕ, ಆಡಳಿತಾತ್ಮಕ ಮತ್ತು ಬೆಂಬಲ ಸಿಬ್ಬಂದಿಯ ಹುದ್ದೆಗಳನ್ನು ಮತ್ತು ಇತರ ಅವಶ್ಯ ಹುದ್ದೆಗಳನ್ನು ಸೃಜಿಸುವುದು;

(xii) ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ಉದ್ದೇಶಗಳಿಗಾಗಿ ಇತರ ವಿಶ್ವವಿದ್ಯಾಲಯಗಳೊಡನೆ ಸಹಕರಿಸುವುದು ಮತ್ತು ಸಹಯೋಗ ಹೊಂದುವುದು;

(xiii) ಶಿಕ್ಷಕರಿಗೆ, ಪಾಠಗಳನ್ನು ರಚಿಸುವವರಿಗೆ, ಮೌಲ್ಯಮಾಪಕರಿಗೆ ಮತ್ತಿತರ ಶೈಕ್ಷಣಿಕ ಸಿಬ್ಬಂದಿಗೆ ಪುನರ್ಮನನ ವ್ಯಾಸಂಗಕ್ರಮಗಳು, ಅಭಿಮುಖ ವ್ಯಾಸಂಗ ಕ್ರಮಗಳು, ಕಾರ್ಯಾಗಾರಗಳು, ವಿಚಾರಗೋಷ್ಠಿಗಳು ಮತ್ತಿತರ ಕಾರ್ಯಕ್ರಮಗಳನ್ನು ಏರ್ಪಡಿಸುವುದು ಮತ್ತು ನಡೆಸುವುದು;

(xiv) ಶೈಕ್ಷಣಿಕ ಪರಿಷತ್ತಿನ ಅನುಮೋದನೆಯೊಂದಿಗೆ ವಿಶ್ವವಿದ್ಯಾಲಯಕ್ಕೆ ಅಥವಾ ಘಟಕ ಕಾಲೇಜಿಗೆ, ಪ್ರಾದೇಶಿಕ ಕೇಂದ್ರಗಳಿಗೆ, ಅಧ್ಯಯನ ಕೇಂದ್ರಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮತ್ತು ಈ ಅಧಿನಿಯಮದಲ್ಲಿ ಕಲ್ಪಿಸಿದ ವ್ಯಾಪ್ತಿಗಿಂತ ಕಡಿಮೆಯಿಲ್ಲದಂತೆ ಕರ್ನಾಟಕದ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮಾನಕ ಗುಣಮಟ್ಟಗಳನ್ನು ನಿರ್ಧರಿಸುವುದು;

(xv) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಕಾರ್ಯರೂಪಕ್ಕೆ ತರಲು ಅವಶ್ಯವಾಗಬಹುದಾದಂಥ ಇತರ ಎಲ್ಲಾ ಕ್ರಮಗಳನ್ನು ಅಥವಾ ಕಾರ್ಯಗಳನ್ನು, ಅವು ಮೇಲೆ ಹೇಳಿದ ಅಧಿಕಾರಗಳಿಗೆ ಪ್ರಾಸಂಗಿಕವಾಗಿರಲಿ ಅಥವಾ ಇಲ್ಲದಿರಲಿ, ಕೈಗೊಳ್ಳುವುದು;

(xvi) ಪರೀಕ್ಷೆಗಳ ಆಧಾರದ ಮೇಲೆ ಅಥವಾ ಸರ್ಕಾರದಿಂದ ಅನುಮೋದಿತವಾದ ಇತರ ಯಾವುದೇ ಮೌಲ್ಯಮಾಪನ ವಿಧಾನದ ಆಧಾರದ ಮೇಲೆ ನೀಡಲು ಪದವಿಗಳು, ಡಿಪ್ಲೋಮಾಗಳು, ಪ್ರಮಾಣಪತ್ರಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಸ್ಥಾಪಿಸುವುದು;

(xvii) ಫಿಲಂಗಳು, ಕ್ಯಾಸೆಟ್‌ಗಳು, ಧ್ವನಿಸುರುಳಿಗಳು, ದೃಶ್ಯಸುರುಳಿಗಳು, ಸಿ.ಡಿ., ವಿ.ಸಿ.ಡಿ. ಮತ್ತು ಇತರ ತಂತ್ರಾಂಶಗಳೂ ಹಾಗೂ ಇತರ ಸಂಬಂಧಿತ ವಿದ್ಯುನ್ಮಾನ ಮತ್ತು ಮುದ್ರಣ ಮಾಧ್ಯಮ ಸೇರಿದಂತೆ ಬೋಧಕ ಸಾಮಗ್ರಿಗಳನ್ನು ತಯಾರಿಸುವುದಕ್ಕಾಗಿ ಅವಕಾಶ ಕಲ್ಪಿಸುವುದು;

(xviii) ಪ್ರಬಂಧಕ ಮಂಡಳಿಯ ಅನುಮೋದನೆಯೊಡನೆ ವಿಶ್ವವಿದ್ಯಾಲಯದ ಉದ್ದೇಶಗಳಿಗಾಗಿ ವಿಶ್ವವಿದ್ಯಾಲಯದ ಸ್ವತ್ತುಗಳನ್ನು ಭದ್ರತೆಯಾಗಿ ನೀಡಿ ಅಥವಾ ನೀಡದೆ ಹಣವನ್ನು ಪಡೆಯುವುದು, ಸಂಗ್ರಹಿಸುವುದು, ಚಂದಾದಾರರಾಗುವುದು ಮತ್ತು ಸಾಲ ಪಡೆಯುವುದು;

(xix) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುದೇ ಇತರ ಶೈಕ್ಷಣಿಕ ಸಂಸ್ಥೆಗಳ ಆಡಳಿತವನ್ನು ವಶಪಡಿಸಿಕೊಳ್ಳುವುದು, ವಹಿಸಿಕೊಳ್ಳುವುದು ಮತ್ತು ನಡೆಸುವುದು;

(xx) ಕಾರ್ಯಕಾರಿ ಪರಿಷತ್ತು ಪೂರ್ವಾನುಮೋದನೆಯೊಂದಿಗೆ ಸ್ವತ್ತುಗಳನ್ನು ಆರ್ಜಿಸುವುದು;

(xxi) ವಿಶ್ವವಿದ್ಯಾಲಯದ ಮೇಲಿನ ಉದ್ದೇಶಗಳಿಗೆ ಸಂಬಂಧಿಸಿದ ಅಥವಾ ಪ್ರಾಸಂಗಿಕವಾದ ಯಾವುದೇ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು.

**9. ವಿಶ್ವವಿದ್ಯಾಲಯವು ಎಲ್ಲಾ ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲರಿಗೂ ಮುಕ್ತವಾಗಿರತಕ್ಕದ್ದು.-** ವಿಶ್ವವಿದ್ಯಾಲಯದ ಪ್ರವೇಶಗಳು ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲಾ ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು. ಎಲ್ಲಾ ಪ್ರವೇಶಗಳನ್ನು ಅರ್ಹತಾ ಪರೀಕ್ಷೆಗಳಲ್ಲಿನ ಅರ್ಹತೆಯ ಆಧಾರದ ಮೇಲೆ ಮಾಡತಕ್ಕದ್ದು:

ಪರಂತು, ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳ ಪ್ರವೇಶದಲ್ಲಿ ಶೇಕಡಾ ನಲವತ್ತರಷ್ಟನ್ನು ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ಮೀಸಲಿಡತಕ್ಕದ್ದು ಮತ್ತು ಪ್ರವೇಶಗಳನ್ನು ರಾಜ್ಯ ಸರ್ಕಾರವು ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡತಕ್ಕದ್ದು ಮತ್ತು ಸೀಟುಗಳನ್ನು ಅರ್ಹತ ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ರೂಪಿಸುವ ಮೀಸಲಾತಿ ನೀತಿಗೆ ಅನುಸಾರವಾಗಿ ಹಂಚಿಕೆ ಮಾಡತಕ್ಕದ್ದು:

ಮತ್ತು ಪರಂತು, ಯಾವುದೇ ಕೋರ್ಸಿನಲ್ಲಿ ಹತ್ತಕ್ಕಿಂತ ಕಡಿಮೆ ಸೀಟುಗಳು ಇರುವಲ್ಲಿ, ಸ್ನಾತಕೋತ್ತರ ಇಂಥ ಕೋರ್ಸುಗಳನ್ನು ಒಟ್ಟಿಗೆ ಒಂದುಗೂಡಿಸುವ ಮೂಲಕ ಮೀಸಲಿಡತಕ್ಕದ್ದು ಮತ್ತು ಯಾವುದೇ ಕೋರ್ಸಿನಲ್ಲಿ ಮೂರು ಸೀಟುಗಳಿಗಿಂತ ಕಡಿಮೆ ಇರುವಲ್ಲಿ, ಅವುಗಳನ್ನು ಸರದಿ ಸುತ್ತಿನಲ್ಲಿ ಮೀಸಲಿಡತಕ್ಕದ್ದು.

**10. ರಾಷ್ಟ್ರೀಯ ಅಧಿಮಾನ್ಯತೆ.–** ವಿಶ್ವವಿದ್ಯಾಲಯವು ಪ್ರಾರಂಭವಾದ ತರುವಾಯ ಆದಷ್ಟು ಬೇಗನೆ ಸಂಬಂಧಪಟ್ಟ ಶಾಸನಾತ್ಮಕ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳಿಂದ ಅಧಿಮಾನ್ಯತೆಯನ್ನು ಕೋರತಕ್ಕದ್ದು ಮತ್ತು ಖಾಸಗಿ ವಿಶ್ವವಿದ್ಯಾಲಯಗಳು ನಡೆಸುವ ಎಲ್ಲಾ ವ್ಯಾಸಂಗ ಕ್ರಮಗಳು ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ವಿನಿಯಮಗಳಿಗೆ ಅನುಸಾರವಾಗಿ ಇರತಕ್ಕದ್ದು.

**11. ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು.–** ಪ್ರಾಯೋಜಕ ಸಂಸ್ಥೆಯು ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದಂತೆ ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಇವುಗಳಲ್ಲಿ ಪ್ರತಿಯೊಂದನ್ನು ಪ್ರಾಯೋಜಕ ಸಂಸ್ಥೆಯು ತನ್ನ ವಿವೇಚನಾನುಸಾರ ಚಲಾಯಿಸಬಹುದು, ಎಂದರೆ:–

(i) ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಪುನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(ii) ವಿಶ್ವವಿದ್ಯಾಲಯದ ಪ್ರಥಮ ಪ್ರಬಂಧಕ ಮಂಡಳಿಯನ್ನು ರಚಿಸುವುದು;

(iii) ಪ್ರಬಂಧಕ ಮಂಡಳಿಯ ಅಧ್ಯಕ್ಷರನ್ನು ನಾಮನಿರ್ದೇಶಿಸುವುದು;

(iv) ಪ್ರಬಂಧಕ ಮಂಡಳಿಯ ಸದಸ್ಯರಾಗಿ ಮೂರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(v) ಕಾರ್ಯಕಾರಿ ಪರಿಷತ್ತಿನ ಸದಸ್ಯರಾಗಿ ಇಬ್ಬರು ವ್ಯಕ್ತಿಗಳನ್ನು ನಾಮ ನಿರ್ದೇಶಿಸುವುದು;

(vi) ವಿಶ್ವವಿದ್ಯಾಲಯದ ದತ್ತಿ ನಿಧಿಗೆ ದೇಣಿಗೆ ನೀಡಲು ನಿಧಿ ಮೂಲಗಳನ್ನು ನಿರ್ಧರಿಸುವುದು;

(vii) ವಿಶ್ವವಿದ್ಯಾಲಯದ ಹಣದ ವಿನಿಯೋಗ ಮತ್ತು ವೆಚ್ಚ ಮಾಡುವುದನ್ನು ನಿರ್ಧರಿಸುವುದು;

(viii) ಈ ಅಧಿನಿಯಮದಲ್ಲಿ ಉಪಬಂಧಿಸಿರುವ ವಿಧಾನದಲ್ಲಿ ಪ್ರಬಂಧಕ ಮಂಡಳಿಯ ಸಭೆಯಲ್ಲಿಯ ವಿವಾದಗಳನ್ನು ಬಗೆಹರಿಸುವುದು;

## ಅಧ್ಯಾಯ – III

## ವಿಶ್ವವಿದ್ಯಾಲಯದ ಅಧಿಕಾರಿಗಳು

**12. ವಿಶ್ವವಿದ್ಯಾಲಯದ ಅಧಿಕಾರಿಗಳು.–** ಈ ಮುಂದಿನವರು ವಿಶ್ವವಿದ್ಯಾಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:–

(i) ಸಂದರ್ಶಕರು;

(ii) ಸಹ–ಸಂದರ್ಶಕರು;

(iii) ಕುಲಾಧಿಪತಿಗಳು;

(iv) ಕುಲಪತಿಗಳು;

(v) ಸಹಕುಲಪತಿಗಳು;

(vi) ಕುಲಸಚಿವರು;

(vii) ಹಣಕಾಸು ಅಧಿಕಾರಿ; ಮತ್ತು

(viii) ಪರಿನಿಯಮಗಳ ಮೂಲಕ ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಘೋಷಿಸಬಹುದಾದಂಥ ಇತರ ಅಧಿಕಾರಿಗಳು.

**13. ಸಂದರ್ಶಕರು.–** (1) ಕರ್ನಾಟಕದ ಘನತೆವೆತ್ತ ರಾಜ್ಯಪಾಲರು ವಿಶ್ವವಿದ್ಯಾಲಯದ ಸಂದರ್ಶಕರಾಗಿರತಕ್ಕದ್ದು ಮತ್ತು ಸಂದರ್ಶಕರು ವಿಶ್ವವಿದ್ಯಾಲಯದ ಕಾರ್ಯನಿರ್ವಹಣೆಯ ಸುಧಾರಣೆಗಾಗಿ ಸಲಹೆಗಳನ್ನು ನೀಡಬಹುದು.

(2) ಸಂದರ್ಶಕರು, ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಸಂದರ್ಶಕರು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ವ್ಯವಹಾರಗಳಿಗೆ ಸಂಬಂಧಿಸಿದಂತೆ, ಯಾವುದೇ ಪತ್ರ ಅಥವಾ ಮಾಹಿತಿಯನ್ನು ತರಿಸಿಕೊಳ್ಳುವುದು.

(ii) ಸಂದರ್ಶಕರು, ಅವರು ಸ್ವೀಕರಿಸಿದ ಮಾಹಿತಿಯ ಆಧಾರದ ಮೇಲೆ ವಿಶ್ವವಿದ್ಯಾಲಯಗಳ ಯಾವುದೇ ಪ್ರಾಧಿಕಾರವು ಮಾಡಿದ ಯಾವುದೇ ಆದೇಶ, ನಡೆಸಿದ ವ್ಯವಹರಣೆಗಳು ಅಥವಾ ಕೈಗೊಂಡ ತೀರ್ಮಾನಗಳು, ಈ ಅಧಿನಿಯಮ, ವಿನಿಯಮಗಳು ಅಥವಾ ನಿಯಮಗಳಿಗೆ ಪೂರಕವಾಗಿಲ್ಲವೆಂದು ಮನಗಂಡರೆ ಅವರು ವಿಶ್ವವಿದ್ಯಾಲಯದ

ಹಿತಾಸಕ್ತಿಯಿಂದ ತಾವು ಸೂಕ್ತವೆಂದು ಭಾವಿಸಬಹುದಾದಂಥ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಹಾಗೆ ಹೊರಡಿಸಿದ ನಿರ್ದೇಶನಗಳನ್ನು ಸಂಬಂಧಪಟ್ಟವರೆಲ್ಲರೂ ಪಾಲಿಸತಕ್ಕದ್ದು.

**14. ಸಹ-ಸಂದರ್ಶಕರು.-** (1) ಕರ್ನಾಟಕ ಸರ್ಕಾರದ ಮಾನ್ಯ ಉನ್ನತ ಶಿಕ್ಷಣ ಸಚಿವರು ವಿಶ್ವವಿದ್ಯಾಲಯದ ಸಹ-ಸಂದರ್ಶಕರಾಗಿರತಕ್ಕದ್ದು.

(2) ಸಂದರ್ಶಕರ ಅನುಪಸ್ಥಿತಿಯಲ್ಲಿ ಸಹ-ಸಂದರ್ಶಕರು ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**15. ಕುಲಾಧಿಪತಿಗಳು.-** (1) ಕುಲಾಧಿಪತಿಯವರನ್ನು ಪ್ರಾಯೋಜಕ ಸಂಸ್ಥೆಯು ನೇಮಿಸತಕ್ಕದ್ದು.

(2) ಪ್ರಾಯೋಜಕ ಸಂಸ್ಥೆಯ ಪ್ರಸ್ತುತ ಅಧ್ಯಕ್ಷರು ಮೊದಲನೇ ಕುಲಾಧಿಪತಿಗಳಾಗಿರತಕ್ಕದ್ದು, ಅವರು ತಮ್ಮ ಜೀವನಪರ್ಯಂತ ಅಥವಾ ಅವರು ತಮ್ಮ ಪದವನ್ನು ಬಿಟ್ಟುಕೊಡುವವರೆಗೆ ಕುಲಾಧಿಪತಿಗಳಾಗಿ ಪದಧಾರಣ ಮಾಡಿರತಕ್ಕದ್ದು.

(3) ತದನಂತರದ ಕುಲಾಧಿಪತಿಗಳು, ಅಂಥ ನೇಮಕಾತಿಯನ್ನು ಪರಿಗಣಿಸುವ ಸಂದರ್ಭದಲ್ಲಿ ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ, ಪ್ರಾಯೋಜಕ ಸಂಸ್ಥೆಯ ನ್ಯಾಸಧಾರಿಯಾಗಿರತಕ್ಕದ್ದು ಅಥವಾ ಶಿಕ್ಷಣ, ವಿಜ್ಞಾನ, ಸಂಸ್ಕೃತಿ ಅಥವಾ ಸಾರ್ವಜನಿಕ ಜೀವನ ಕ್ಷೇತ್ರಗಳಲ್ಲಿ ರಾಷ್ಟ್ರೀಯ ಮಟ್ಟದ ಛಾಪನ್ನು ಪಡೆದಿರುವ ಅಂಥ ಇತರ ವ್ಯಕ್ತಿಯಾಗಿರತಕ್ಕದ್ದು.

(4) ಹಾಗೆ ನೇಮಕಗೊಂಡ ತದನಂತರದ ಕುಲಾಧಿಪತಿಗಳು ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ಪದಧಾರಣ ಮಾಡತಕ್ಕದ್ದು.

(5) ಕುಲಾಧಿಪತಿಗಳು ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳ ಅಡಿಯಲ್ಲಿ ಅವರಿಗೆ ಪ್ರದಾನ ಮಾಡಬಹುದಾದಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು, ಅವುಗಳಲ್ಲಿ ಈ ಮುಂದಿನ ಅಧಿಕಾರಗಳು ಒಳಗೊಂಡಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುವುದು;

(ii) ಸಂದರ್ಶಕರ ಮತ್ತು ಸಹ-ಸಂದರ್ಶಕರಿಬ್ಬರ ಗೈರುಹಾಜರಿಯಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಘಟಿಕೋತ್ಸವಗಳಲ್ಲಿ ಅಧ್ಯಕ್ಷತೆಯನ್ನು ವಹಿಸುವುದು;

(iii) ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವುದು;

(iv) ಈ ಅಧಿನಿಯಮ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಅನುಸಾರವಾಗಿ ಕುಲಪತಿಗಳನ್ನು ನೇಮಿಸುವುದು ಅಥವಾ ಮನರ್ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(v) ಈ ಅಧಿನಿಯಮದ 16ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ನಾಮನಿರ್ದೇಶಕ' ಸಮಿತಿಯ ಸದಸ್ಯರಾಗಿ ಒಬ್ಬ ವ್ಯಕ್ತಿಯನ್ನು ನಾಮನಿರ್ದೇಶನ ಮಾಡುವುದು;

(vi) ಸಹಕುಲಪತಿಗಳು, ಡೀನ್, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿಗಳ ನೇಮಕಾತಿಯನ್ನು ಪೂರ್ವಾನುಮೋದಿಸುವುದು;

(vii) ಪ್ರಬಂಧಕ ಮಂಡಳಿಯ ಸದಸ್ಯರನ್ನಾಗಿ ಇಬ್ಬರು ಶಿಕ್ಷಣ ತಜ್ಞರನ್ನು ನಾಮನಿರ್ದೇಶಿಸುವುದು;

(viii) ಮೊದಲ ಸಹಕುಲಪತಿಗಳು ಮತ್ತು ಹಣಕಾಸು ಅಧಿಕಾರಿಗಳನ್ನು ನೇಮಿಸುವುದು;

(ix) ಮೊದಲ ವ್ಯವಸ್ಥಾಪನಾ ಮಂಡಳಿ, ಹಣಕಾಸು ಸಮಿತಿ, ಸಂಶೋಧನಾ ಪರಿಷತ್ತು ಹಾಗೂ ಶೈಕ್ಷಣಿಕ ಪರಿಷತ್ತುಗಳನ್ನು ರಚಿಸುವುದು;

(x) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ ಕಾರ್ಯಸೂಚಿ ವಿಷಯಗಳನ್ನು ಪೂರ್ವಾನುಮೋದಿಸುವುದು;

(xi) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ (ಪ್ರಬಂಧಕ ಮಂಡಳಿಯ ಸಭೆಯಲ್ಲಿ ಉಂಟಾದ ವಿವಾದಗಳನ್ನು ಹೊರತುಪಡಿಸಿ) ವಿವಾದಗಳನ್ನು ಪರಿಹರಿಸುವುದು.

(6) ಪದಾಧಿಕಾರಿ ಅಥವಾ ಸಂಸ್ಥೆ ಮತ್ತು ವಿಶ್ವವಿದ್ಯಾಲಯದ ಯಾವುದೇ ಇತರ ಪದಾಧಿಕಾರಿ ಅಥವಾ ಸಂಸ್ಥೆಯ ನಡುವೆ ವಿವಾದಗಳು ಉಂಟಾದಲ್ಲಿ, ಆ ವಿವಾದವನ್ನು ಕುಲಾಧಿಪತಿಯವರ ಪರ್ಯಾಲೋಚನೆಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿವಾದದ ಸಂದರ್ಭದಲ್ಲಿ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**16. ಕುಲಪತಿಗಳು.-** (1) (2)ನೇ ಉಪಪ್ರಕರಣದ ಉಪಬಂಧಗಳಿಗೆ ಅನುಸಾರವಾಗಿ ನಾಮನಿರ್ದೇಶಕ ಸಮಿತಿಯು ಶಿಫಾರಸ್ಸು ಮಾಡಿದ ಮೂರು ವ್ಯಕ್ತಿಗಳ ಪೈಕಿಯಿಂದ ಒಬ್ಬರನ್ನು ಮೂರು ವರ್ಷಗಳ ಅವಧಿಗಾಗಿ ಕುಲಪತಿಗಳನ್ನಾಗಿ, ಪರಿನಿಯಮಗಳಲ್ಲಿ ನಿಯಮಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರು ನೇಮಿಸತಕ್ಕದ್ದು. ಮೂರು ವರ್ಷಗಳ ಅವಧಿಯು ಮುಗಿದ ತರುವಾಯ, ಇದನ್ನು ಮೂರು ವರ್ಷಗಳ ಮತ್ತೊಂದು ಅವಧಿಗೆ ನವೀಕರಿಸಬಹುದು:

ಪರಂತು, ಕುಲಪತಿಯವರು, ತಮ್ಮ ಅವಧಿ ಮುಗಿದ ನಂತರವೂ ಹೊಸ ಕುಲಪತಿಯವರು ಸೇರಿಕೊಳ್ಳುವವರೆಗೆ ಪದದಲ್ಲಿ ಮುಂದುವರೆಯತಕ್ಕದ್ದು. ಆದಾಗ್ಯೂ ಈ ಅವಧಿಯು ಯಾವುದೇ ಸಂದರ್ಭದಲ್ಲಿ ಒಂದು ವರ್ಷವನ್ನು ಮೀರತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಹೇಳಿರುವ ನಾಮನಿರ್ದೇಶಕ ಸಮಿತಿಯಲ್ಲಿ ಈ ಮುಂದಿನ ವ್ಯಕ್ತಿಗಳು ಇರತಕ್ಕದ್ದು, ಎಂದರೆ:-

(i) ಕುಲಾಧಿಪತಿಯವರು ನಾಮನಿರ್ದೇಶಿಸಿದ ಒಬ್ಬ ವ್ಯಕ್ತಿ;

(ii) ಪ್ರಬಂಧಕ ಮಂಡಳಿಯ ಇಬ್ಬರು ನಾಮ ನಿರ್ದೇಶಿತರು, ಇವರಲ್ಲಿ ಒಬ್ಬರನ್ನು ಪ್ರಬಂಧಕ ಮಂಡಳಿಯು ಸಮಿತಿಯ ಸಂಚಾಲಕರೆಂದು ನಾಮನಿರ್ದೇಶಿಸತಕ್ಕದ್ದು.

(3) ನಾಮನಿರ್ದೇಶನ ಸಮಿತಿಯು, ಅರ್ಹತೆಯ ಆಧಾರದ ಮೇಲೆ ಕುಲಪತಿಯ ಹುದ್ದೆಗೆ ಸೂಕ್ತವಾದ ಮೂರು ವ್ಯಕ್ತಿಗಳ ಹೆಸರನ್ನು ಶಿಫಾರಸ್ಸು ಮಾಡತಕ್ಕದ್ದು ಮತ್ತು ಅದನ್ನು ಪ್ರತಿಯೊಬ್ಬ ವ್ಯಕ್ತಿಯ ವಿದ್ಯಾರ್ಹತೆ ಮತ್ತಿತರ ವಿಶಿಷ್ಟ ಪ್ರಶಸ್ತಿಗಳನ್ನು ತಿಳಿಸುವ ಒಂದು ಸಂಕ್ಷಿಪ್ತ ವರದಿಯೊಂದಿಗೆ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು.

(4) ಕುಲಪತಿಯವರು ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಾಹಕ ಮತ್ತು ಶೈಕ್ಷಣಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣವನ್ನು ಚಲಾಯಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯದ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೊಳಿಸತಕ್ಕದ್ದು:

ಪರಂತು, ಶಿಕ್ಷಕರ ನೇಮಕಾತಿಯನ್ನು ಹೊರತುಪಡಿಸಿ ಕೂಡಲೇ ಕ್ರಮವನ್ನು ಕೈಗೊಳ್ಳಬೇಕಾದ ತುರ್ತು ಸ್ವರೂಪದ ಯಾವುದೇ ಇತರ ವಿಷಯಗಳಲ್ಲಿ ಮತ್ತು ಅದನ್ನು ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ವಿಶ್ವವಿದ್ಯಾಲಯವು ಇದಕ್ಕಾಗಿ ಅಧಿಕೃತಗೊಳಿಸಿದ್ದ ಯಾವೊಬ್ಬ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ಇತರ ಸಂಸ್ಥೆಯು ಕೂಡಲೇ ಕ್ರಮಕೈಗೊಳ್ಳುವುದು ಸಾಧ್ಯವಿರದಿರುವಾಗ ಕುಲಪತಿಯವರು ತಾನು ಸೂಕ್ತವೆಂದು ಭಾವಿಸಬಹುದಾದಂತಹ ಕ್ರಮವನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆದು ಕೈಗೊಳ್ಳತಕ್ಕದ್ದು.

(5) ಕುಲಪತಿಯವರು ಪರಿನಿಯಮಗಳು ಅಥವಾ ನಿಯಮಗಳಲ್ಲಿ ಹೇಳಲಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು:

ಪರಂತು, ಕುಲಪತಿಗಳ ಅಭಿಪ್ರಾಯದಲ್ಲಿ, ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಯಾವುದೇ ನಿರ್ಣಯವು, ಈ ಅಧಿನಿಯಮ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳು, ವಿನಿಯಮಗಳು ಅಥವಾ ನಿಯಮಗಳ ಮೂಲಕ ಪ್ರದತ್ತವಾದ ಅಧಿಕಾರದ ಹೊರಗಿದ್ದರೆ ಅಥವಾ ವಿಶ್ವವಿದ್ಯಾಲಯದ ಹಿತಾಸಕ್ತಿಗೆ ಪ್ರತಿಕೂಲವಾಗಬಹುದಾಗಿದ್ದರೆ, ಅದರ ನಿರ್ಣಯದ ದಿನಾಂಕದಿಂದ ಹದಿನೈದು ದಿನಗಳ ಒಳಗೆ ತನ್ನ ನಿರ್ಣಯವನ್ನು ಪರಿಷ್ಕರಿಸಲು ಸಂಬಂಧಪಟ್ಟ ಪ್ರಾಧಿಕಾರವನ್ನು ಆತನು ಕೋರತಕ್ಕದ್ದು ಮತ್ತು ಪ್ರಾಧಿಕಾರವು ಅಂಥ ನಿರ್ಣಯವನ್ನು ಸಂಪೂರ್ಣವಾಗಿ ಅಥವಾ ಭಾಗಶಃವಾಗಿ ಪರಿಷ್ಕರಿಸಲು ನಿರಾಕರಿಸಿದ ಸಂದರ್ಭದಲ್ಲಿ ಅಥವಾ ಹದಿನೈದು ದಿನಗಳೊಳಗೆ ಯಾವುದೇ ನಿರ್ಣಯವನ್ನು ತೆಗೆದುಕೊಳ್ಳಲು ವಿಫಲವಾದಲ್ಲಿ, ನಂತರ ಅಂಥ ವಿಷಯವನ್ನು ಕುಲಾಧಿಪತಿಗಳಿಗೆ ಕಳುಹಿಸತಕ್ಕದ್ದು ಮತ್ತು ಈ ಬಗ್ಗೆ ಇವರ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

(6) ಕುಲಪತಿಯವರ ಸೇವೆಗಳನ್ನು, ಪ್ರಬಂಧಕ ಮಂಡಳಿಯ ಅನುಮೋದನೆಯೊಂದಿಗೆ ಮತ್ತು ಸಹಜ ನ್ಯಾಯದ ತತ್ವಗಳನ್ನು ಅನುಸರಿಸಿದ ನಂತರ ಹಾಗೂ ಶಿಸ್ತಿನ ಆಧಾರದ ಮೇಲೆ ಅಂತ್ಯಗೊಳಿಸುವ ಸಂದರ್ಭವೂ ಸೇರಿದಂತೆ, ಪ್ರಕರಣದ ಬಗ್ಗೆ ಕುಲಪತಿಯು ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡಿದ ತರುವಾಯ, ಕುಲಾಧಿಪತಿಯವರು ಅಂತ್ಯಗೊಳಿಸಬಹುದು.

(7) ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಸಂದರ್ಶಕರು, ಸಹ-ಸಂದರ್ಶಕರು ಮತ್ತು ಕುಲಾಧಿಪತಿಯವರು ಇವರುಗಳ ಗೈರು ಹಾಜರಿಯ ಸಂದರ್ಭದಲ್ಲಿ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**17. ಸಹಕುಲಪತಿಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಮೂರು ಜನರನ್ನು ಮೀರದಂತೆ ಸಹಕುಲಪತಿಗಳನ್ನು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**18. ವ್ಯಾಸಂಗ ವಿಭಾಗಗಳ ಡೀನ್‌ಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಪರಿನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವ್ಯಾಸಂಗ ವಿಭಾಗಗಳ ಡೀನ್‌ಗಳನ್ನು ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**19. ಕುಲಸಚಿವರು.–** (1) ಕುಲಾಧಿಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಸಚಿವರನ್ನು ನೇಮಕ ಮಾಡತಕ್ಕದ್ದು.

(2) ಪರಿನಿಯಮಗಳಲ್ಲಿ ಪರಿಭಾಷಿಸಿರುವಂಥ ಎಲ್ಲಾ ಕರಾರುಗಳನ್ನು ವಿಶ್ವವಿದ್ಯಾಲಯದ ಪರವಾಗಿ ಕುಲಸಚಿವರು ಮಾಡಿಕೊಳ್ಳತಕ್ಕದ್ದು ಮತ್ತು ಅದಕ್ಕೆ ಸಹಿ ಹಾಕತಕ್ಕದ್ದು.

(3) ಕುಲಸಚಿವರು ವಿಶ್ವವಿದ್ಯಾಲಯದ ಪರವಾಗಿ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಪರಿನಿಯಮಗಳಿಂದ ಪ್ರದತ್ತಗೊಳಿಸಬಹುದಾದಂಥ ಅಥವಾ ಕುಲಾಧಿಪತಿಯವರು ಮತ್ತು ಕುಲಪತಿಯವರು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು ವಿಶ್ವವಿದ್ಯಾಲಯದ ದಾಖಲೆಗಳು ಮತ್ತು ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು, ಕುಲಪತಿಯವರು ಅಥವಾ ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಅಂಥ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿತಕ್ಕದ್ದು.

**20. ಹಣಕಾಸು ಅಧಿಕಾರಿ.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು, ಪರಿನಿಯಮಗಳ ಮೂಲಕ ಪ್ರದತ್ತಗೊಳಿಸಬಹುದಾದ ಅಂಥ ವಿಧಾನದಲ್ಲಿ ಹಣಕಾಸು ಅಧಿಕಾರಿಯನ್ನು ನೇಮಕ ಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**21. ಇತರ ಅಧಿಕಾರಿಗಳು.–** ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ ನೇಮಕಾತಿಯ ವಿಧಾನ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಕರ್ತವ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ – IV

## ವಿಶ್ವವಿದ್ಯಾಲಯದ ಪ್ರಾಧಿಕಾರಗಳು

**22. ವಿಶ್ವವಿದ್ಯಾಲಯದ ಪ್ರಾಧಿಕಾರಗಳು.–** ಈ ಮುಂದಿನವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:–

(i) ಪ್ರಬಂಧಕ ಮಂಡಳಿ;

(ii) ವ್ಯವಸ್ಥಾಪನಾ ಮಂಡಳಿ;

(iii) ಶೈಕ್ಷಣಿಕ ಪರಿಷತ್ತು;

(iv) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು;

(v) ಹಣಕಾಸು ಸಮಿತಿ; ಮತ್ತು

(vi) ವಿಶ್ವವಿದ್ಯಾಲಯದ ಪ್ರಾಧಿಕಾರಗಳೆಂದು ಪರಿನಿಯಮಗಳ ಮೂಲಕ ಘೋಷಿಸಬಹುದಾದ ಅಂಥ ಇತರ ಪ್ರಾಧಿಕಾರಗಳು.

**23. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು.–** (1) ಪ್ರಬಂಧಕ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು – ಅಧ್ಯಕ್ಷರು;

(ii) ಕುಲಪತಿಯವರು – ಸದಸ್ಯರು;

(iii) ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(iv) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(v) ರಾಜ್ಯ ಸರ್ಕಾರವು ನಾಮ ನಿರ್ದೇಶನ ಮಾಡಿದ ಆಡಳಿತವನ್ನು ಒಳಗೊಂಡಂತೆ ವ್ಯವಸ್ಥಾಪನೆ, ಹಣಕಾಸು ಅಥವಾ ಯಾವುದೇ ಇತರ ವಿಶೇಷ ಕ್ಷೇತ್ರದಲ್ಲಿನ ಒಬ್ಬರು ತಜ್ಞರು;

(vi) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಇಬ್ಬರು ವ್ಯಕ್ತಿಗಳು ಅವರ ಪೈಕಿ ಒಬ್ಬರು ಮಹಿಳೆಯಾಗಿರತಕ್ಕದ್ದು;

(vii) ಸಹ ಕುಲಪತಿಯವರು ಮತದಾನದ ಹಕ್ಕಿಲ್ಲದ ಸದಸ್ಯರಾಗಿರತಕ್ಕದ್ದು;

(viii) ವಿಶ್ವವಿದ್ಯಾಲಯ ಅನುದಾನ ಆಯೋಗದ ನಾಮನಿರ್ದೇಶಿತ ಒಬ್ಬ ಸುಪ್ರಸಿದ್ಧ ಶಿಕ್ಷಣ ತಜ್ಞರು.

(2) ಕುಲಸಚಿವರು ಪ್ರಬಂಧಕ ಮಂಡಳಿಯ ಮತ ದಾನದ ಹಕ್ಕಿರದ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ಪ್ರಬಂಧಕ ಮಂಡಳಿಯ ಸದಸ್ಯರ ಪದಾವಧಿ, ಸರ್ಕಾರದಿಂದ ನಾಮನಿರ್ದೇಶಿತರಾದ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ನೇಮಕಾತಿ, ನವೀಕರಣ ಮತ್ತು ತೆಗೆದುಹಾಕುವುದು ಮುಂತಾದವುಗಳು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಾಧಿಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರ ಗೈರುಹಾಜರಿಯಲ್ಲಿ ಕುಲಾಧಿಪತಿಯವರಿಂದ ನಾಮನಿರ್ದೇಶಿತರಾದ ಯಾರಾದರೂ ಒಬ್ಬರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು. ಅಂಥ

ಸಭೆಯ ಅಧ್ಯಕ್ಷತೆಯನ್ನು ವಹಿಸುವುದಕ್ಕೆ ಕುಲಾಧಿಪತಿಯವರು ಯಾವೊಬ್ಬ ವ್ಯಕ್ತಿಯನ್ನೂ ನಾಮನಿರ್ದೇಶನ ಮಾಡಿರದಿದ್ದಲ್ಲಿ, ಸಭೆಯಲ್ಲಿ ಹಾಜರಿರುವ ಸದಸ್ಯರು ಸರಳ ಬಹುಮತದ ಮೂಲಕ ಅವರುಗಳ ಪೈಕಿಯಿಂದಲೇ ಆ ಸಭೆಗೆ ಮಾತ್ರವೇ ಅಧ್ಯಕ್ಷನನ್ನು ಚುನಾಯಿಸತಕ್ಕದ್ದು.

(5) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಿಗೆ, ಅಂಥ ಸಭೆಯಲ್ಲಿ ಹಾಜರಾಗುವ ಮತ್ತು ಮತದಾನ ನೀಡುವ ಮೂರು ಜನ ಸದಸ್ಯರು ಗಣಪೂರ್ತಿ (ಕೋರಂ) ಆಗಿರತಕ್ಕದ್ದು:

ಪರಂತು, ಪ್ರಬಂಧಕ ಮಂಡಳಿಯ ಯಾವುದೇ ಸಭೆಯ ಕೋರಂ ಪೂರ್ಣವಾಗಬೇಕಾದರೆ ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಿರುವುದು ಮತ್ತು ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ನಾಮನಿರ್ದೇಶಿತರು ಹಾಜರಾಗದೇ ಇದ್ದಾಗ ಕುಲಪತಿಯವರು ಹಾಜರಿರುವುದು ಯಾವಾಗಲೂ ಅವಶ್ಯವಾಗಿರತಕ್ಕದ್ದು.

(6) ಪ್ರಬಂಧಕ ಮಂಡಳಿಯು ವಿಶ್ವವಿದ್ಯಾಲಯದ ಪ್ರಧಾನ ಪ್ರಬಂಧಕ ಸಂಸ್ಥೆಯಾಗಿರತಕ್ಕದ್ದು ಮತ್ತು ಅದು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಕಗೊಳಿಸುವುದು;

(ii) ವಿಶ್ವವಿದ್ಯಾಲಯವು ಅನುಸರಿಸಬೇಕಾದ ಕಾರ್ಯನೀತಿಗಳನ್ನು ರಚಿಸುವುದು;

(iii) ಈ ಅಧಿನಿಯಮದ ಅಥವಾ ಪರಿನಿಯಮಗಳ ಅಥವಾ ನಿಯಮಗಳ ಉಪಬಂಧಗಳಿಗೆ ಅನುಗುಣವಾಗಿ ಇರದ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ತೀರ್ಮಾನಗಳನ್ನು ಪುನರೀಕ್ಷಿಸುವುದು;

(iv) ವಿಶ್ವವಿದ್ಯಾಲಯದ ಆಯವ್ಯಯ ಮತ್ತು ವಾರ್ಷಿಕ ವರದಿಗಳನ್ನು ಅನುಮೋದಿಸುವುದು;

(v) ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸುವುದು ಅಥವಾ ಈಗಾಗಲೇ ಇರುವ ಪರಿನಿಯಮಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವುದು ಅಥವಾ ನಿರಸನಗೊಳಿಸುವುದು;

(vi) ವಿಶ್ವವಿದ್ಯಾಲಯವನ್ನು ಸ್ವಯಂಸಮಾಪನಗೊಳಿಸುವ ನಿರ್ಧಾರವನ್ನು ತೆಗೆದುಕೊಳ್ಳುವುದು;

(vii) ಸರ್ಕಾರಕ್ಕೆ ಸಲ್ಲಿಸುವ ಪ್ರಸ್ತಾವಗಳನ್ನು ಅನುಮೋದಿಸುವುದು;

(viii) ಶುಲ್ಕ ನಿಯಂತ್ರಣ ಸಮಿತಿಗೆ ಮೂವರು ಸದಸ್ಯರನ್ನು ನಾಮನಿರ್ದೇಶನ ಮಾಡುವುದು;

(ix) ವಿಶ್ವವಿದ್ಯಾಲಯದ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕೆ ಅಪೇಕ್ಷಣೀಯವೆಂದು ಕಂಡುಬರುವಂಥ ತೀರ್ಮಾನಗಳನ್ನು ಮತ್ತು ಕ್ರಮಗಳನ್ನು ಕೈಗೊಳ್ಳುವುದು.

(7) ಪ್ರಬಂಧಕ ಮಂಡಳಿಯು ಒಂದು ವರ್ಷದಲ್ಲಿ ಕನಿಷ್ಠ ಮೂರು ಸಲ ಸಭೆ ಸೇರತಕ್ಕದ್ದು.

(8) ಪ್ರಬಂಧಕ ಮಂಡಳಿಯು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಸಮಯ ಮತ್ತು ಸ್ಥಳದಲ್ಲಿ ಸಭೆ ಸೇರತಕ್ಕದ್ದು.

**24. ವ್ಯವಸ್ಥಾಪನಾ ಮಂಡಳಿ.**- (1) ವ್ಯವಸ್ಥಾಪನಾ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಗಳು;

(ii) ಸಹಕುಲಪತಿಗಳು;

(iii) ಕುಲಸಚಿವರು;

(iv) ಪ್ರಾಯೋಜಕ ಸಂಸ್ಥೆಯ ಇಬ್ಬರು ನಾಮನಿರ್ದೇಶಿತರು;

(v) ಕುಲಪತಿಗಳು ನಾಮನಿರ್ದೇಶಿಸಬಹುದಾದ ವಿದ್ಯಾಲಯಗಳ ಇಬ್ಬರು ಡೀನ್‌ಗಳು;

(2) ಕುಲಪತಿಯವರು ವ್ಯವಸ್ಥಾಪನಾ ಮಂಡಳಿಯ ಅಧ್ಯಕ್ಷರಾಗಿರತಕ್ಕದ್ದು ಮತ್ತು ಕುಲಸಚಿವರು ವ್ಯವಸ್ಥಾಪನಾ ಮಂಡಳಿಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ವ್ಯವಸ್ಥಾಪನಾ ಮಂಡಳಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ವ್ಯವಸ್ಥಾಪನಾ ಮಂಡಳಿಯ ಎಲ್ಲಾ ಸಭೆಗಳಲ್ಲಿ ಯಾವಾಗಲೂ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು ಹಾಗೂ ಕುಲಪತಿಯವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೇ ಇದ್ದ ಸಂದರ್ಭದಲ್ಲಿ ಸಭೆಯಲ್ಲಿ ಹಾಜರಿರುವ ಸದಸ್ಯರು ಚುನಾಯಿಸಿದ ಯಾವುದೇ ಇತರ ಸದಸ್ಯರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ವ್ಯವಸ್ಥಾಪನಾ ಮಂಡಳಿಯ ಸಭೆಯಲ್ಲಿ ಯಾವುದೇ ವಿಷಯವನ್ನು ಕುರಿತು ವಿವಾದ ಉಂಟಾದಲ್ಲಿ ಸದರಿ ವಿಷಯವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯದ ಬಗ್ಗೆ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**25. ಶೈಕ್ಷಣಿಕ ಪರಿಷತ್ತು.**–(1) ಶೈಕ್ಷಣಿಕ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಕಾರ್ಯದರ್ಶಿಗಳು

(iv) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಶೈಕ್ಷಣಿಕ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಶೈಕ್ಷಣಿಕ ಸಂಸ್ಥೆಯಾಗಿರತಕ್ಕದ್ದು ಮತ್ತು ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಹಾಗೂ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**26. ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು.**– (1) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಸಂಶೋಧನಾ ಮತ್ತು ಅನ್ವೇಷಣಾ ಸಮಿತಿಯಾಗಿರತಕ್ಕದ್ದು ಹಾಗೂ ಸಂಶೋಧನಾ ಕ್ಷೇತ್ರಗಳ ಆದ್ಯತೆಯೂ ಒಳಗೊಂಡಂತೆ, ವಿಶ್ವವಿದ್ಯಾಲಯವು ಕೈಗೊಳ್ಳಬೇಕಾದ ಸಂಶೋಧನೆಯ ಬಗ್ಗೆ ಒಂದು ವ್ಯಾಪಕವಾದ ಪರಿಪೂರ್ಣ ಭವಿಷ್ಯದ್ ದೃಷ್ಟಿಯನ್ನು ಒದಗಿಸತಕ್ಕದ್ದು. ಈ ಪರಿಷತ್ತು, ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಮತ್ತು ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಸಂಶೋಧನೆ ಮತ್ತು ಅನ್ವೇಷಣಾ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಸಂಶೋಧನೆಯ ಡೀನ್ – ಕಾರ್ಯದರ್ಶಿ

(iv) ಅನ್ವೇಷಣಾ ವಿಭಾಗದ ಮುಖ್ಯಸ್ಥರು – ಸದಸ್ಯರು

(V) ಎಲ್ಲಾ ವ್ಯಾಸಂಗ ವಿಭಾಗಗಳ ಡೀನ್‌ಗಳು – ಸದಸ್ಯರು ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

**27. ಹಣಕಾಸು ಪರಿಷತ್ತು.**– (1) ಹಣಕಾಸು ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು ಅಥವಾ ಅವರ ನಾಮನಿರ್ದೇಶಿತರು – ಅಧ್ಯಕ್ಷರು

(ii) ಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಸದಸ್ಯರು

(iv) ಹಣಕಾಸು ಅಧಿಕಾರಿ – ಕಾರ್ಯದರ್ಶಿ

(V) ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು – ಸದಸ್ಯರು; ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಹಣಕಾಸು ಪರಿಷತ್ತು ಹಣಕಾಸಿನ ವಿಷಯಗಳನ್ನು ಕೈಗೊಳ್ಳುವ ವಿಶ್ವವಿದ್ಯಾಲಯದ ಪ್ರಧಾನ ಹಣಕಾಸು ಸಂಸ್ಥೆಯಾಗಿರತಕ್ಕದ್ದು ಹಾಗೂ ಅದು ಈ ಅಧಿನಿಯಮ, ನಿಯಮಗಳು ಮತ್ತು ಪರಿನಿಯಮಗಳ ಉಪಬಂಧಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಹಣಕಾಸು ವಿಷಯಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**28. ಇತರ ಪ್ರಾಧಿಕಾರಗಳು.**– ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ರಚನೆ, ಅಧಿಕಾರಗಳು ಹಾಗೂ ಪ್ರಕಾರ್ಯಗಳು ಪರಿನಿಯಮಗಳಿಂದ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

**29. ಒಂದು ಪ್ರಾಧಿಕಾರದ ಅಥವಾ ಸಂಸ್ಥೆಯ ಸದಸ್ಯತ್ವಕ್ಕೆ ಅನರ್ಹತೆ.–** ವಿಶ್ವವಿದ್ಯಾಲಯದ ಸಂಸ್ಥೆಗಳ ಯಾವುವೇ ಪ್ರಾಧಿಕಾರಗಳ ಒಬ್ಬ ವ್ಯಕ್ತಿಯು,–

(ಎ) ಅಸ್ವಸ್ಥ ಚಿತ್ತನಾಗಿದ್ದು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿಸಲ್ಪಟ್ಟಿದ್ದರೆ;

(ಬಿ) ಅವಿಮುಕ್ತ ದಿವಾಳಿಯಾಗಿದ್ದರೆ;

(ಸಿ) ನೈತಿಕ ಅಧ:ಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದರೆ;

(ಡಿ) ಖಾಸಗಿ ಬೋಧನಾ ತರಗತಿಗಳನ್ನು ನಡೆಸುತ್ತಿದ್ದರೆ ಅಥವಾ ಸ್ವತ: ನಿರತನಾಗಿದ್ದರೆ;

(ಇ) ಯಾವುದೇ ವಿಧದಲ್ಲಿ, ಎಲ್ಲಿಯೇ, ಯಾವುದೇ ಪರೀಕ್ಷೆಯನ್ನು ನಡೆಸುವಲ್ಲಿ ಅನುಚಿತ ಅಭ್ಯಾಸದಲ್ಲಿ ತೊಡಗಿದ್ದಕ್ಕಾಗಿ ಅಥವಾ ಉತ್ತೇಜಿಸಿದ್ದಕ್ಕಾಗಿ ದಂಡಿತನಾಗಿದ್ದರೆ;

(ಎಫ್) ಪ್ರಾಯೋಜಿತ ಸಂಸ್ಥೆಯು ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಯಾವೊಬ್ಬ ಸದಸ್ಯನನ್ನು ಆ ಪದವನ್ನು ಹೊಂದಿರುವುದಕ್ಕೆ ಅರ್ಹನಲ್ಲನೆಂದು ಲಿಖಿತದಲ್ಲಿ ಅಭಿಪ್ರಾಯ ನೀಡಿದಾಗಲೆಲ್ಲಾ,

–ಸದಸ್ಯನಾಗಿರುವುದಕ್ಕೆ ಅನರ್ಹನಾಗತಕ್ಕದ್ದು.

**30. ಖಾಲಿಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಕಾರ್ಯ ಅಥವಾ ವ್ಯವಹರಣೆಗಳು ಕೇವಲ ಅದರಲ್ಲಿ ಯಾವುದೇ ಖಾಲಿಸ್ಥಾನ ಇದೆ ಎಂಬ ಕಾರಣದಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣದಿಂದ ಮಾತ್ರವೇ ಅಸಿಂಧುವಾಗತಕ್ಕದ್ದಲ್ಲ.

**31. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು.–** (1) ಯಾವುವೇ ಕಾರ್ಯಸೂಚಿ ವಿಷಯಗಳನ್ನು ಕುಲಾಧಿಪತಿಯವರ ಪೂರ್ವಾನುಮೋದನೆಯನ್ನು ಪಡೆಯದೇ ಪ್ರಬಂಧಕ ಮಂಡಳಿಯ ಅಥವಾ ಕಾರ್ಯಕಾರಿ ಪರಿಷತ್ತು ಅಥವಾ ಯಾವುದೇ ಸಮಿತಿಯ ಸಭೆಗಳ ಕಾರ್ಯಸೂಚಿ ವಿಷಯಗಳಲ್ಲಿ ಸೇರಿಸತಕ್ಕದ್ದಲ್ಲ ಅಥವಾ ಚರ್ಚೆಗೆ ತೆಗೆದುಕೊಳ್ಳತಕ್ಕದ್ದಲ್ಲ ಮತ್ತು ತೀರ್ಮಾನಿಸತಕ್ಕದ್ದಲ್ಲ.

(2) ಈ ಅಧಿನಿಯಮದ ಯಾವುದೇ ಉಪಬಂಧಗಳನ್ನು ಪಾಲಿಸದೆ ಇರುವ ಸಂದರ್ಭದಲ್ಲಿ, ಕುಲಾಧಿಪತಿಯವರು ವಿಶ್ವವಿದ್ಯಾಲಯದ ಯಾವುದೇ ಪದಾಧಿಕಾರಿ ಅಥವಾ ಸಂಸ್ಥೆಯು ತೆಗೆದುಕೊಂಡ ಎಲ್ಲಾ ತೀರ್ಮಾನಗಳನ್ನು ವಿಪರ್ಯಯಗೊಳಿಸುವ ಮೂಲಕ ಪರಿಹಾರ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಅಧಿಕಾರವನ್ನು ಎಲ್ಲಾ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಅಂಥ ಪರಿಹಾರ ಕ್ರಮದ ಪರಿಣಾಮವಾಗಿ ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ವಿಶ್ವವಿದ್ಯಾಲಯದ ಪದಾಧಿಕಾರಿ ಅಥವಾ ಸಂಸ್ಥೆಯು ಕೈಗೊಂಡಿದ್ದ ಎಲ್ಲಾ ಅಂಥ ಕ್ರಮಗಳು, ಮೊದಲಿನಿಂದಲೂ ಶೂನ್ಯ ಮತ್ತು ಅಕೃತ ಎಂದು ಭಾವಿಸತಕ್ಕದ್ದು ಹಾಗೂ ತತ್ಪರಿಣಾಮವಾಗಿ, ಉಪಬಂಧ ಪಾಲಿಸದೇ ಇದ್ದ ವಿಷಯ ಅಥವಾ ನಿರ್ಧಾರದ ಸಂಬಂಧದಲ್ಲಿ ಅದಕ್ಕೆ ಮುಂಚೆ ಇದ್ದ ವಸ್ತುಸ್ಥಿತಿಯೇ ಮುಂದುವರಿಯತಕ್ಕದ್ದು.

## ಅಧ್ಯಾಯ – V

## ಪರಿನಿಯಮಗಳು ಮತ್ತು ವಿನಿಯಮಗಳು

**32. ಪರಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಪರಿನಿಯಮಗಳು ವಿಶ್ವವಿದ್ಯಾಲಯಕ್ಕೆ ಮತ್ತು ಸಿಬ್ಬಂದಿಗೆ ಸಂಬಂಧಿಸಿದ ಎಲ್ಲಾ ಅಥವಾ ಯಾವುದೇ ವಿಷಯಕ್ಕೆ ಈ ಕೆಳಗಿನಂತೆ ಉಪಬಂಧ ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಕಾರ್ಯಕಲಾಪಗಳನ್ನು ನಡೆಸುವ ಮತ್ತು ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸದಿರುವ ಸಂಸ್ಥೆಗಳ ರಚನೆಯ ಕಾರ್ಯವಿಧಾನ;

(ii) ಶಾಶ್ವತ ಶಾಸನಬದ್ಧ ದತ್ತಿ ನಿಧಿ, ವಿಶ್ವವಿದ್ಯಾಲಯ ದತ್ತಿ ನಿಧಿ, ಸಾಮಾನ್ಯ ನಿಧಿ ಹಾಗೂ ಅಭಿವೃದ್ಧಿ ನಿಧಿಗಳ ನಿರ್ವಹಣೆ;

(iii) ಕುಲಪತಿಗಳು, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರ ನೇಮಕಾತಿಯ ನಿಬಂಧನೆಗಳು ಹಾಗೂ ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಪ್ರಕಾರ್ಯಗಳು;

(iv) ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ, ಅಧ್ಯಾಪಕರ ಮತ್ತು ನೌಕರರ ನೇಮಕಾತಿ ವಿಧಾನ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(v) ವಿಶ್ವವಿದ್ಯಾಲಯ ಹಾಗೂ ಅದರ ಅಧಿಕಾರಿಗಳು, ವ್ಯಾಸಂಗ ವಿಭಾಗದ (ಫ್ಯಾಕಲ್ಟಿ) ಸದಸ್ಯರು, ನೌಕರರು ಹಾಗೂ ವಿದ್ಯಾರ್ಥಿಗಳ ನಡುವೆ ಉಂಟಾದ ವಿವಾದಗಳನ್ನು ಪರಿಹರಿಸುವ ಕಾರ್ಯವಿಧಾನ;

(vi) ವಿಭಾಗಗಳು ಮತ್ತು ವ್ಯಾಸಂಗ ವಿಭಾಗಗಳ (ಫ್ಯಾಕಲ್ಟಿಗಳ) ಸೃಜನೆ, ರದ್ದತಿ ಅಥವಾ ಪುನಾರಚನೆ;

(vii) ಇತರ ವಿಶ್ವವಿದ್ಯಾಲಯಗಳು ಅಥವಾ ಉನ್ನತ ಕಲಿಕಾ ಸಂಸ್ಥೆಗಳ ಜೊತೆಯಲ್ಲಿ ಸಹಕರಿಸಬೇಕಾದ ರೀತಿ;

(viii) ಗೌರವ ಪದವಿಗಳ ನೀಡಿಕೆಯ ಕಾರ್ಯವಿಧಾನ;

(ix) ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿವೇತನ ಮಂಜೂರಾತಿಗೆ ಸಂಬಂಧಿಸಿದ ಉಪಬಂಧಗಳು;

(x) ವಿವಿಧ ವ್ಯಾಸಂಗ ಕ್ರಮಗಳಲ್ಲಿನ ಸೀಟುಗಳ ಸಂಖ್ಯೆಗೆ ಸಂಬಂಧಿಸಿದ ಕಾರ್ಯನೀತಿಗಳು ಮತ್ತು ಅಂಥ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಕಾರ್ಯವಿಧಾನ;

(xi) ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಶುಲ್ಕಕ್ಕೆ ಸಂಬಂಧಿಸಿದ ಕಾರ್ಯನೀತಿ;

(xii) ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಉಚಿತ ಶಿಕ್ಷಣ, ಪದಕಗಳು ಹಾಗೂ ಬಹುಮಾನಗಳನ್ನು ಪ್ರಾರಂಭಿಸುವುದು;

(xiii) ಪ್ರಬಂಧಕ ಮಂಡಳಿಯು ನಿರ್ಧರಿಸಬಹುದಾದ ಅಥವಾ ಈ ಅಧಿನಿಯಮದ ಅಡಿಯಲ್ಲಿ ಪರಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬೇಕಾದ ಅಗತ್ಯತೆಯುಳ್ಳ ಯಾವುದೇ ಇತರ ವಿಷಯಗಳು.

**33. ಪರಿನಿಯಮಗಳ ರಚನೆ ವಿಧಾನ.–** (1) ವ್ಯವಸ್ಥಾಪನಾ ಮಂಡಳಿಯು ರಚಿಸಿದ ಮೊದಲ ಶಾಸನಗಳನ್ನು ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ವ್ಯವಸ್ಥಾಪನಾ ಮಂಡಳಿಯು ಸಲ್ಲಿಸಿದ ಮೊದಲ ಪರಿನಿಯಮಗಳನ್ನು ಪ್ರಬಂಧಕ ಮಂಡಳಿಯು ಪರಿಗಣಿಸತಕ್ಕದ್ದು ಹಾಗೂ ತಾನು ಅವಶ್ಯವೆಂದು ಭಾವಿಸಬಹುದಾದ ಅಂಥ ಮಾರ್ಪಾಡುಗಳು, ಯಾವುದಾದರು ಇದ್ದಲ್ಲಿ, ಅವುಗಳೊಡನೆ ತನ್ನ ಅನುಮೋದನೆಯನ್ನು ನೀಡತಕ್ಕದ್ದು.

(3) ವಿಶ್ವವಿದ್ಯಾಲಯವು, ಪ್ರಬಂಧಕ ಮಂಡಳಿಯು ಅನುಮೋದಿಸಿದ ಮೊದಲ ಪರಿನಿಯಮಗಳನ್ನು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ಪ್ರಕಟಿಸತಕ್ಕದ್ದು ಮತ್ತು ತದನಂತರ ಮೊದಲ ಪರಿನಿಯಮಗಳ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**34. ಪರಿನಿಯಮಗಳ ತಿದ್ದುಪಡಿಯ ಅಧಿಕಾರ.–** ಪ್ರಬಂಧಕ ಮಂಡಳಿಯು ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸಬಹುದು ಅಥವಾ ಪರಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ಅವನ್ನು ನಿರಸನಗೊಳಿಸಬಹುದು.

**35. ವಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ವಿನಿಯಮಗಳು ಈ ಮುಂದಿನ ವಿಷಯಗಳಿಗೆ ಉಪಬಂಧಗಳನ್ನು ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ವಿದ್ಯಾರ್ಥಿ ಪಟ್ಟಿಯಲ್ಲಿ ಅವರುಗಳ ದಾಖಲಾತಿ ಹಾಗೂ ಮುಂದುವರಿಕೆ;

(ii) ವಿಶ್ವವಿದ್ಯಾಲಯದ ಎಲ್ಲಾ ಪದವಿಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ನಿಗದಿಪಡಿಸತಕ್ಕ ವ್ಯಾಸಂಗ ಕ್ರಮಗಳು;

(iii) ಪದವಿಗಳ ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರದಾನ;

(iv) ಸಂಶೋಧನಾ ವೇತನಗಳು (ಫೆಲೋಶಿಪ್), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಪದಕಗಳು ಮತ್ತು ಬಹುಮಾನಗಳನ್ನು ನೀಡಲು ಷರತ್ತುಗಳು;

(v) ಪರೀಕ್ಷೆಗಳನ್ನು ನಡೆಸುವುದು ಹಾಗೂ ಪರೀಕ್ಷೆ ನಡೆಸುವ ಸಂಸ್ಥೆಗಳು, ಪರೀಕ್ಷಕರು, ಪರೀಕ್ಷಾ ಮೇಲ್ವಿಚಾರಕರು, ಟ್ಯಾಬುಲೇಟರ್‌ಗಳು ಮತ್ತು ಮಾಡರೇಟರ್‌ಗಳ ನೇಮಕಾತಿ ಷರತ್ತುಗಳು ಮತ್ತು ವಿಧಾನ ಹಾಗೂ ಅವರ ಕರ್ತವ್ಯಗಳು;

(vi) ವಿಶ್ವವಿದ್ಯಾಲಯದ ಪರೀಕ್ಷೆಗಳಿಗೆ, ಪದವಿಗಳಿಗೆ ಹಾಗೂ ಇತರ ಶೈಕ್ಷಣಿಕ ಪ್ರಶಸ್ತಿಗಳಿಗೆ ಪ್ರವೇಶಕ್ಕೆ ವಿಧಿಸತಕ್ಕ ಶುಲ್ಕ;

(vii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನಲ್ಲಿ ವಿದ್ಯಾರ್ಥಿಗಳ ನಿವಾಸಕ್ಕಾಗಿ ಷರತ್ತುಗಳು;

(viii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಶಿಸ್ತು ಪಾಲನೆ;

(ix) ಈ ಅಧಿನಿಯಮದ ಅಡಿಯಲ್ಲಿನ ಪರಿನಿಯಮಗಳಲ್ಲಿ ಉಪಬಂಧ ಕಲ್ಪಿಸಬಹುದಾದಂಥ ಇತರ ಎಲ್ಲಾ ವಿಷಯಗಳು.

**36. ವಿನಿಯಮಗಳ ರಚನೆ ವಿಧಾನ.–** ವಿನಿಯಮಗಳನ್ನು ಶೈಕ್ಷಣಿಕ ಪರಿಷತ್ತು ರಚಿಸತಕ್ಕದ್ದು ಹಾಗೂ ವ್ಯವಸ್ಥಾಪನಾ ಮಂಡಳಿಯು ಅನುಮೋದಿಸತಕ್ಕದ್ದು.

**37. ವಿನಿಯಮಗಳ ತಿದ್ದುಪಡಿಗೆ ಅಧಿಕಾರ.–** ವ್ಯವಸ್ಥಾಪನಾ ಮಂಡಳಿಯ ಅನುಮೋದನೆಯೊಡನೆ ಶೈಕ್ಷಣಿಕ ಪರಿಷತ್ತು ಹೊಸ ವಿನಿಯಮಗಳನ್ನು ಅಥವಾ ಹೆಚ್ಚುವರಿ ವಿನಿಯಮಗಳನ್ನು ರಚಿಸಬಹುದು ಅಥವಾ ವಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ನಿರಸನಗೊಳಿಸಬಹುದು.

**38. ಶುಲ್ಕ ನಿಯಂತ್ರಣ ಸಮಿತಿ.–** (1) ಸರ್ಕಾರವು ರಚಿಸಿದ ನಿವೃತ್ತ ಸರ್ವೋಚ್ಚ ನ್ಯಾಯಾಲಯದ ಅಥವಾ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು ಮುಖ್ಯಸ್ಥರಾಗಿರುವ ಮತ್ತು ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ, ಉನ್ನತ ಶಿಕ್ಷಣ ಪ್ರಭಾರದಲ್ಲಿರುವ ಸರ್ಕಾರದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು, ವೈದ್ಯಕೀಯ ಶಿಕ್ಷಣದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು, ಒಬ್ಬ ಮಹಿಳೆಯೂ ಸೇರಿದಂತೆ ಪ್ರಬಂಧಕ ಮಂಡಳಿಯು ನಾಮನಿರ್ದೇಶಿಸಿದ ಇಬ್ಬರು ಶಿಕ್ಷಣ ತಜ್ಞರು ಇವರುಗಳನ್ನು ಒಳಗೊಂಡ ಒಂದು ಶುಲ್ಕ ನಿಯಂತ್ರಣ ಸಮಿತಿಯು, 9ನೇ ಪ್ರಕರಣದ ಅಡಿಯಲ್ಲಿ ಕರ್ನಾಟಕದ ವಿದ್ಯಾರ್ಥಿಗಳಿಗಾಗಿ ಮೀಸಲಿರಿಸಿದ ವಿಶ್ವವಿದ್ಯಾಲಯದ ಸ್ಥಾನಗಳ ಶುಲ್ಕವನ್ನು ನಿಯಂತ್ರಿಸತಕ್ಕದ್ದು. ಸಮಿತಿಯಲ್ಲಿ ಈ ಉದ್ದೇಶಕ್ಕಾಗಿ ಒಬ್ಬರು ಖ್ಯಾತ ಚಾರ್ಟರ್ಡ್ ಅಕೌಂಟೆಂಟ್ ರವರನ್ನು ಸಹ ಸದಸ್ಯನನ್ನಾಗಿ ಸೇರಿಸಿಕೊಳ್ಳತಕ್ಕದ್ದು.

(2) ಸಮಿತಿಯು ವಿಶ್ವವಿದ್ಯಾಲಯದ ಪ್ರವೇಶಗಳ ಮತ್ತು ಶುಲ್ಕದ ಸಂಗ್ರಹಣೆಯ ಅನುಪಾಲನೆಯನ್ನು ನೋಡಿಕೊಳ್ಳತಕ್ಕದ್ದು.

## ಅಧ್ಯಾಯ – VI

## ಸಂಕೀರ್ಣ

**39. ನೌಕರರ ಸೇವಾ ಷರತ್ತುಗಳು.–** (1) ಪರಿನಿಯಮಗಳ ಮತ್ತು ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಥವಾ ನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳು, ಯಾವುದಾದರೂ ಇದ್ದಲ್ಲಿ, ಅವುಗಳಿಗೆ ಒಳಪಟ್ಟು ಪ್ರತಿಯೊಬ್ಬ ನೌಕರನು ಲಿಖಿತ ಕರಾರಿನ ಅಡಿಯಲ್ಲಿ ನೇಮಕಗೊಳ್ಳತಕ್ಕದ್ದು ಮತ್ತು ಅದನ್ನು ವಿಶ್ವವಿದ್ಯಾಲಯದಲ್ಲಿ ಇಟ್ಟುಕೊಳ್ಳತಕ್ಕದ್ದು ಹಾಗೂ ಅದರ ಪ್ರತಿಯನ್ನು ಸಂಬಂಧಪಟ್ಟ ನೌಕರನಿಗೆ ನೀಡತಕ್ಕದ್ದು.

(2) ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಕಾರ್ಯವಿಧಾನಗಳ ಮೂಲಕ ನಿಯಂತ್ರಿಸತಕ್ಕದ್ದು.

(3) ಕರಾರಿನಿಂದಾಗಿ ವಿಶ್ವವಿದ್ಯಾಲಯ ಮತ್ತು ನೌಕರನ ಮಧ್ಯದಲ್ಲಿ ಉದ್ಭವಿಸಬಹುದಾದ ಯಾವುದೇ ವಿವಾದವನ್ನು, ಲಿಖಿತ ಕರಾರಿನಲ್ಲಿ ಉಪಬಂಧಿಸಿದ ವಿಧಾನದಲ್ಲಿ ಹಾಗೂ ಪರಿನಿಯಮಗಳ ಅನುಸಾರವಾಗಿ ಪರಿಹರಿಸತಕ್ಕದ್ದು.

**40. ಮೇಲ್ಮನವಿ ಹಕ್ಕು.–** ವಿಶ್ವವಿದ್ಯಾಲಯವು ತನ್ನ ನೌಕರರ ಅಥವಾ ವಿದ್ಯಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡ ಸಂದರ್ಭದಲ್ಲಿ, ಬಾಧಿತ ನೌಕರ ಅಥವಾ ವಿದ್ಯಾರ್ಥಿಗಳು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಮೇಲ್ಮನವಿ ಹಕ್ಕನ್ನು ಹೊಂದಿರತಕ್ಕದ್ದು.

**41. ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿ.–** ವಿಶ್ವವಿದ್ಯಾಲಯವು, ತನ್ನ ನೌಕರರ ಪ್ರಯೋಜನಕ್ಕಾಗಿ, ಪರಿನಿಯಮಗಳು ಮತ್ತು ಜಾರಿಯಲ್ಲಿರುವ ಕಾನೂನುಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿಯನ್ನು ರಚಿಸತಕ್ಕದ್ದು ಹಾಗೂ ಅಂಥ ವಿಮಾ ಯೋಜನೆಗಳನ್ನು ಒದಗಿಸತಕ್ಕದ್ದು.

**42. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಇತರ ಸಂಸ್ಥೆಯ ಸದಸ್ಯನಾಗಿ ಯಾವೊಬ್ಬ ವ್ಯಕ್ತಿಯು ಸೂಕ್ತವಾಗಿ ಆಯ್ಕೆಯಾಗಿದ್ದಾನೆಯೇ ಅಥವಾ ನೇಮಕಗೊಂಡಿದ್ದಾನೆಯೇ ಅಥವಾ ಅದಕ್ಕೆ ಅರ್ಹನಾಗಿದ್ದಾನೆಯೇ ಎಂಬ ಯಾವುದೇ ಪ್ರಶ್ನೆ ಉದ್ಭವಿಸಿದರೆ, ಆ ವಿಷಯವನ್ನು ತೀರ್ಮಾನಕ್ಕಾಗಿ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**43. ಸಮಿತಿಗಳ ರಚನೆ.–** 22ನೇ ಪ್ರಕರಣದಲ್ಲಿ ನಮೂದಿಸಿದ ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಅಧಿಕಾರವನ್ನು ಹೊಂದಿರುವ ಅಂಥ ಸದಸ್ಯರನ್ನು ಒಳಗೊಂಡ ಅಂಥ ಪ್ರಾಧಿಕಾರದ ಒಂದು ಸಮಿತಿಯನ್ನು ರಚಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**44. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಂಸ್ಥೆಯ ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ಪೈಕಿ ಯಾವುದೇ ಸ್ಥಾನವು ಆಕಸ್ಮಿಕವಾಗಿ ಖಾಲಿಯಾದರೆ, ಯಾರ ಸ್ಥಾನವು ಖಾಲಿಯಾಗಿ ತುಂಬಬೇಕಾಗಿ ಬಂದಿದೆಯೋ ಆ ಸದಸ್ಯನನ್ನು ಯಾವ ರೀತಿಯಲ್ಲಿ ಆರಿಸಲಾಗಿತ್ತೋ ಅದೇ ರೀತಿಯಲ್ಲಿ ಹೊಸ ಸದಸ್ಯನನ್ನು ಆರಿಸಿ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ಖಾಲಿ ಸ್ಥಾನವನ್ನು ಭರ್ತಿ ಮಾಡಿದ ವ್ಯಕ್ತಿಯು ಆತನು ಯಾವ ಸದಸ್ಯನ ಸ್ಥಾನದಲ್ಲಿ ಭರ್ತಿಯಾಗಿರುವನೋ ಆ ಸದಸ್ಯನು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯನಾಗಿ ಉಳಿಯುತ್ತಿದ್ದ ಬಾಕಿ ಅವಧಿಯವರೆಗೆ ಮಾತ್ರ ಸದಸ್ಯನಾಗಿರತಕ್ಕದ್ದು.

**45. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.–** ಈ ಅಧಿನಿಯಮ ಅಥವಾ ಪರಿನಿಯಮಗಳು ಅಥವಾ ನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ವಿಶ್ವವಿದ್ಯಾಲಯದ ಯಾವೊಬ್ಬ ಅಧಿಕಾರಿ ಅಥವಾ ಇತರ ನೌಕರರ ವಿರುದ್ಧ ಯಾವುದೇ ದಾವೆ ಅಥವಾ ಇತರ ಕಾನೂನು ವ್ಯವಹರಣೆಗಳನ್ನು ನಡೆಸಲು ಅವಕಾಶ ಇರತಕ್ಕದ್ದಲ್ಲ.

**46. ತಾತ್ಕಾಲಿಕ ಉಪಬಂಧಗಳು.–** ಈ ಅಧಿನಿಯಮ ಮತ್ತು ಪರಿನಿಯಮಗಳ ಯಾವುದೇ ಇತರ ಉಪಬಂಧಗಳಲ್ಲಿ ಏನೇ ಇದ್ದರೂ,-

(i) ಮೊದಲ ಕುಲಪತಿ ಮತ್ತು ಸಹಕುಲಪತಿ, ಯಾರಾದರೂ ಇದ್ದರೆ, ಅವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(ii) ಮೊದಲ ಕುಲಸಚಿವರನ್ನು ಮತ್ತು ಮೊದಲ ಹಣಕಾಸು ಅಧಿಕಾರಿಯವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು; ಮತ್ತು

(iii) ಮೊದಲ ವ್ಯವಸ್ಥಾಪನ ಮಂಡಳಿ, ಮೊದಲ ಹಣಕಾಸು ಸಮಿತಿ, ಮೊದಲ ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಹಾಗೂ ಮೊದಲ ಶೈಕ್ಷಣಿಕ ಪರಿಷತ್ತನ್ನು ಕುಲಾಧಿಪತಿಯವರು ರಚಿಸತಕ್ಕದ್ದು.

**47. ಶಾಶ್ವತ ಶಾಸನಬದ್ಧ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಕನಿಷ್ಠ ಇಪ್ಪತ್ತೈದು ಕೋಟಿ ರೂಪಾಯಿಗಳನ್ನುಳ್ಳ ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು ಇದರ ಪೈಕಿ ಕನಿಷ್ಠ ಹದಿನೈದು ಕೋಟಿ ರೂಪಾಯಿಗಳು ನಗದು ರೂಪದಲ್ಲಿ ಮತ್ತು ಇನ್ನುಳಿದದ್ದು ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ಇರತಕ್ಕದ್ದು ಮತ್ತು ಇದನ್ನು ತಾನಾಗಿಯೆ ಹೆಚ್ಚಿಸಬಹುದಾಗಿದ್ದು ಆದರೆ ಕಡಿಮೆ ಮಾಡತಕ್ಕದ್ದಲ್ಲ.

ಪರಂತು, ಬೆಂಗಳೂರು ಅಥವಾ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊರಗಿರುವ ವಿಶ್ವವಿದ್ಯಾಲಯದ ಸಂದರ್ಭದಲ್ಲಿ ಕನಿಷ್ಠ ಹತ್ತು ಕೋಟಿ ರೂಪಾಯಿಗಳು ನಗದು ರೂಪದಲ್ಲಿರತಕ್ಕದ್ದು ಮತ್ತು ಉಳಿದ ಐದು ಕೋಟಿ ರೂಪಾಯಿಗಳು ಬ್ಯಾಂಕ್ ಗ್ಯಾರಂಟಿಯ ರೂಪದಲ್ಲಿರತಕ್ಕದ್ದು.

(2) ವಿಶ್ವವಿದ್ಯಾಲಯವು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಹಣವನ್ನು ಹೂಡಲು ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯವು ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಗೆ ವರ್ಗಾವಣೆ ಮಾಡಬಹುದು. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನೂ ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(4) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಿದ ವರಮಾನದ ಶೇಕಡಾ ಎಪ್ಪತ್ತೈದರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತೈದರಷ್ಟನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**48. ವಿಶ್ವವಿದ್ಯಾಲಯದ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ನಿಧಿಗಳನ್ನು ಒಳಗೊಂಡ ವಿಶ್ವವಿದ್ಯಾಲಯದ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದು ಕಾಲಕಾಲಕ್ಕೆ ಸ್ವೀಕರಿಸಬಹುದಾದ ದೇಣಿಗೆಗಳು ಮತ್ತು ಇತರ ನಿಧಿಗಳನ್ನು ಒಳಗೊಂಡಿರತಕ್ಕದ್ದು.

(2) ವಿಶ್ವವಿದ್ಯಾಲಯವು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ವಿಶ್ವವಿದ್ಯಾಲಯದ ದತ್ತಿನಿಧಿಯನ್ನು ಹೂಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯ ದತ್ತಿ ನಿಧಿಯು, ವಿಶ್ವವಿದ್ಯಾಲಯವು ತನ್ನ ಸಾಮಾಜಿಕ ಧ್ಯೇಯೋದ್ದೇಶಗಳನ್ನು ನೆರವೇರಿಸುವ ಸಂದರ್ಭದಲ್ಲಿ ಮತ್ತು/ಅಥವಾ ಮುಂಗಾಣದ ಸನ್ನಿವೇಶದಲ್ಲಿ ಉದ್ಭವಿಸಬಹುದಾದ ಹಣಕಾಸು ಸವಾಲುಗಳಿಂದ ತನ್ನನ್ನು ರಕ್ಷಿಸಿಕೊಳ್ಳುವುದಕ್ಕಾಗಿ, ಸ್ವಇಚ್ಛೆಯಿಂದ ನಿರ್ವಹಿಸಿಕೊಂಡು ಬರಲು ಮತ್ತು ಜವಾಬ್ದಾರಿಯಿಂದ ಹಣ ಹೂಡಿಕೆ ಮಾಡಲು ಇಚ್ಛೆಯುಳ್ಳವರಾಗಿ ಸ್ವಯಂ ವಿಧಿಸಿಕೊಂಡ ನಿಧಿಯಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಗೆ ವರ್ಗಾಯಿಸಬಹುದು. ವಿಶ್ವವಿದ್ಯಾಲಯದ ಸಮಾಪಣೆಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನು ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(5) ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಬರುವ ವರಮಾನದ ಶೇಕಡಾ ಎಂಭತ್ತರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸದ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತರಷ್ಟನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**49. ಸಾಮಾನ್ಯ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಸಾಮಾನ್ಯ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯವು ವಿಧಿಸಬಹುದಾದ ಎಲ್ಲಾ ಶುಲ್ಕಗಳು;

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವುದೇ ಇತರ ಮೂಲದಿಂದ ಸ್ವೀಕರಿಸಲಾದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ದೇಣಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು;

(2) ಸಾಮಾನ್ಯ ನಿಧಿಗೆ ಜಮಾ ಮಾಡುವ ನಿಧಿಗಳನ್ನು ವಿಶ್ವವಿದ್ಯಾಲಯದ ಎಲ್ಲಾ ಆವರ್ತಕ ವೆಚ್ಚಗಳನ್ನು ಭರಿಸಲು ಉಪಯೋಗಿಸಿಕೊಳ್ಳತಕ್ಕದ್ದು.

**50. ಅಭಿವೃದ್ಧಿ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಅಭಿವೃದ್ಧಿ ನಿಧಿಯನ್ನು ಸಹ ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:-

(i) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ವಿದ್ಯಾರ್ಥಿಗಳಿಂದ ವಿಧಿಸಬಹುದಾದ ಅಭಿವೃದ್ಧಿ ಶುಲ್ಕಗಳು;

(ii) ವಿಶ್ವವಿದ್ಯಾಲಯದ ಅಭಿವೃದ್ಧಿಯ ಉದ್ದೇಶಗಳಿಗಾಗಿ ಯಾವುದೇ ಇತರ ಮೂಲಗಳಿಂದ ಸ್ವೀಕರಿಸಿದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ವಂತಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು; ಮತ್ತು

(v) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಲಾದ ಎಲ್ಲಾ ವರಮಾನಗಳು.

(2) ಅಭಿವೃದ್ಧಿ ನಿಧಿಗೆ ಕಾಲಕಾಲಕ್ಕೆ ಜಮಾ ಮಾಡಿದ ನಿಧಿಯನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಉಪಯೋಗಿಸಿಕೊಳ್ಳತಕ್ಕದ್ದು.

**51. ನಿಧಿಗಳ ನಿರ್ವಹಣೆ.–** 47, 48, 49 ಮತ್ತು 50ನೇ ಪ್ರಕರಣಗಳಡಿಯಲ್ಲಿ ಸ್ಥಾಪಿಸಲಾದ ನಿಧಿಗಳನ್ನು ಪ್ರಬಂಧಕ ಮಂಡಳಿಯ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ನಿಯಂತ್ರಿಸತಕ್ಕದ್ದು ಹಾಗೂ ನಿರ್ವಹಿಸತಕ್ಕದ್ದು.

**52. ವಾರ್ಷಿಕ ವರದಿ.–** (1) ವಿಶ್ವವಿದ್ಯಾಲಯದ ವಾರ್ಷಿಕ ವರದಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ಅದರ ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಪ್ರಬಂಧಕ ಮಂಡಳಿಯು ವಾರ್ಷಿಕ ವರದಿಯನ್ನು ತನ್ನ ಸಭೆಯಲ್ಲಿ ಪರಿಗಣಿಸತಕ್ಕದ್ದು ಹಾಗೂ ಅದನ್ನು ಮಾರ್ಪಾಡುಗಳೊಡನೆ ಅಥವಾ ಮಾರ್ಪಾಡುಗಳಿಲ್ಲದೆ ಅನುಮೋದಿಸಬಹುದು.

(3) ಪ್ರಬಂಧಕ ಮಂಡಳಿಯು ಸೂಕ್ತವಾಗಿ ಅನುಮೋದಿಸಿದ ವಾರ್ಷಿಕ ವರದಿಯ ಒಂದು ಪ್ರತಿಯನ್ನು ಪ್ರತಿವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ಡಿಸೆಂಬರ್ 31ಕ್ಕೆ ಮೊದಲು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**53. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.–** (1) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕ ಪತ್ರ ಮತ್ತು ಜಮಾ ಖರ್ಚು ಪಟ್ಟಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯಕ್ಕೆ ಎಲ್ಲಾ ಮೂಲಗಳಿಂದ ಪ್ರಾಪ್ತವಾಗುವ ಅಥವಾ ಸ್ವೀಕರಿಸಲಾಗುವ ಎಲ್ಲಾ ನಿಧಿಗಳು ಹಾಗೂ ವಿತರಿಸಿದ ಅಥವಾ ಸಂದಾಯ ಮಾಡಿದ ಎಲ್ಲಾ ಮೊಬಲಗುಗಳನ್ನು ವಿಶ್ವವಿದ್ಯಾಲಯವು ನಿರ್ವಹಿಸುವ ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕಪತ್ರಗಳನ್ನು ಪ್ರತಿ ವರ್ಷವೂ ಭಾರತದ ಚಾರ್ಟೆಡ್ ಅಕೌಂಟೆಂಟ್‌ಗಳ ಸಂಸ್ಥೆಯ ಸದಸ್ಯರಾಗಿರುವ ಒಬ್ಬ ಲೆಕ್ಕಪರಿಶೋಧಕರಿಂದ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಲೆಕ್ಕಪರಿಶೋಧನಾ ವರದಿಯೊಡನೆ, ಪ್ರತಿ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ನವೆಂಬರ್ 30ಕ್ಕೆ ಮೊದಲು ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(4) ವಾರ್ಷಿಕ ಲೆಕ್ಕಪತ್ರಗಳು, ಜಮಾಖರ್ಚು ಪಟ್ಟಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಪ್ರಬಂಧಕ ಮಂಡಳಿಯು ತನ್ನ ಸಭೆಯಲ್ಲಿ ಪರ್ಯಾಲೋಚಿಸತಕ್ಕದ್ದು ಮತ್ತು ಪ್ರಬಂಧಕ ಮಂಡಳಿಯು ಅದನ್ನು ತನ್ನ ಅಭಿಪ್ರಾಯಗಳೊಡನೆ ಸಂದರ್ಶಕರಿಗೆ ಹಾಗೂ ಸರ್ಕಾರಕ್ಕೆ ಪ್ರತಿ ವರ್ಷದ ಡಿಸೆಂಬರ್ 31ಕ್ಕೆ ಮೊದಲು ಕಳುಹಿಸತಕ್ಕದ್ದು.

(5) ಲೆಕ್ಕಪರಿಶೋಧಕರ ವರದಿಯಲ್ಲಿ ಯಾವುದೇ ಮುಖ್ಯ ಬದಲಾವಣೆ ಇದ್ದ ಸಂದರ್ಭದಲ್ಲಿ, ರಾಜ್ಯ ಸರ್ಕಾರವು ವಿಶ್ವವಿದ್ಯಾಲಯಕ್ಕೆ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಅಂಥ ನಿರ್ದೇಶನಗಳು ವಿಶ್ವವಿದ್ಯಾಲಯದ ಮೇಲೆ ಬಂಧನಕಾರಿಯಾಗಿರತಕ್ಕದ್ದು.

**54. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಮಿತಿಯ ಯಾವುದೇ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ ಅಥವಾ ಗೊತ್ತುವಳಿಯು ಅಥವಾ ವಿಶ್ವವಿದ್ಯಾಲಯದ ಸ್ವಾಧೀನದಲ್ಲಿರುವ ಇತರ ದಾಖಲೆಗಳು ಅಥವಾ ವಿಶ್ವವಿದ್ಯಾಲಯವು ಯುಕ್ತವಾಗಿ ನಿರ್ವಹಿಸುವ ಯಾವುದೇ ರಿಜಿಸ್ಟರ್‌ನಲ್ಲಿಯ ಯಾವುದೇ ನಮೂದುಗಳ ಪ್ರತಿಯನ್ನು, ಅದರ ಮೇಲೆ ಕುಲಸಚಿವರು ಪ್ರಮಾಣೀಕರಿಸಿದ್ದರೆ, ಅದನ್ನು ಅಂಥ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ, ಗೊತ್ತುವಳಿ ಅಥವಾ ದಾಖಲೆ ಅಥವಾ ರಿಜಿಸ್ಟರ್‌ನಲ್ಲಿ ಇರುವ ನಮೂದನ್ನು ಮೇಲ್ನೋಟದ ಸಾಕ್ಷ್ಯವೆಂಬುದಾಗಿ ಸ್ವೀಕರಿಸತಕ್ಕದ್ದು ಮತ್ತು ವಿಷಯಗಳ ಸಾಕ್ಷಿಯಾಗಿ ಅಂಗೀಕರಿಸತಕ್ಕದ್ದು ಹಾಗೂ ಮೂಲ ದಾಖಲೆಗಳನ್ನೇ ಸಲ್ಲಿಸಿದ್ದರೆ ಅದನ್ನು, ದಾಖಲಿಸಿರುವ ವಿಷಯಗಳು ಮತ್ತು ವಹಿವಾಟುಗಳ ಸಾಕ್ಷ್ಯವಾಗಿ ಅಂಗೀಕರಿಸಲಾಗುತ್ತಿತ್ತೋ, ಅದೇ ರೀತಿಯಲ್ಲಿ ಇವನ್ನೂ ಸಾಕ್ಷ್ಯವಾಗಿ ಅಂಗೀಕರಿಸತಕ್ಕದ್ದು.

**55. ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ.–** ರಾಜ್ಯಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಥವಾ ಅದರಲ್ಲಿ ಇರುವ ಯಾವುವೇ ಉಪಬಂಧಗಳನ್ನು ಅಥವಾ ಅದರಡಿಯಲ್ಲಿ ರಚಿಸಿದ ಯಾವುವೇ ನಿಯಮಗಳು ಅಥವಾ ಆದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿರ್ದೇಶನ ನೀಡುವುದು ಅವಶ್ಯವೆಂದು ಅಥವಾ ಉಚಿತವೆಂದು ಅಭಿಪ್ರಾಯಪಟ್ಟಲ್ಲಿ ಅದು ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ ಅಥವಾ ಸಂದರ್ಭಾನುಸಾರವಾಗಿ ವ್ಯವಸ್ಥಾಪನಾ ಮಂಡಳಿಯು ಅಂಥ ಪ್ರತಿಯೊಂದು ನಿರ್ದೇಶನವನ್ನು ಪಾಲಿಸತಕ್ಕದ್ದು.

**56. ದಂಡಗಳು.–** (1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿತವಾದ ನಿಯಮಗಳು ಉಪಬಂಧಗಳನ್ನು ಅಥವಾ ಯಾವುದೇ ಪರೀಕ್ಷಾ ವಿಷಯಗಳನ್ನು ಅಥವಾ ಪದವಿಗಳನ್ನು ನೀಡುವುದಕ್ಕೆ ಅಥವಾ ಅಂಕಪಟ್ಟಿಗಳನ್ನು ನೀಡುವುದಕ್ಕೆ ಸಂಬಂಧಪಟ್ಟ ವಿಷಯಗಳಲ್ಲಿ ಉಲ್ಲಂಘನೆಗಳನ್ನು ಮಾಡುವ ಯಾವೊಬ್ಬ ವ್ಯಕ್ತಿಯು, ಅಪರಾಧ ನಿರ್ಣಯವಾದ ಮೇಲೆ, ಐವತ್ತು ಸಾವಿರ ರೂಪಾಯಿಗಳಿಗೆ ಕಡಿಮೆಯಲ್ಲದ ಆದರೆ ಹತ್ತು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಆರು ತಿಂಗಳ ಅವಧಿಗಿಂತ ಕಡಿಮೆಯಲ್ಲದ ಆದರೆ ಎರಡು ವರ್ಷಗಳ ಅವಧಿಯವರೆಗೆ ವಿಸ್ತರಿಸಬಹುದಾದ ಕಾರಾವಾಸದಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು:

ಪರಂತು, ವಿಶ್ವವಿದ್ಯಾಲಯವೂ ಸಹ ಒಳಗೊಂಡಿರುವಲ್ಲಿ, ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಈ ಅಧಿನಿಯಮದ ಅಡಿಯಲ್ಲಿ ಮಂಜೂರು ಮಾಡಲಾದ ಅನುಮತಿ ಪತ್ರವನ್ನು ಹಿಂತೆಗೆದುಕೊಳ್ಳತಕ್ಕದ್ದು.

(2) ಈ ಪ್ರಕರಣದ ಅಡಿಯಲ್ಲಿನ ದಂಡವನ್ನು ಇತರ ಯಾವುದೇ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಲಾದ ದಂಡಕ್ಕೆ ಬಾಧಕವಾಗದಂತೆ ವಿಧಿಸಬಹುದು.

**57. ಪ್ರವೇಶಿಸುವ ಮತ್ತು ಪರಿಶೋಧಿಸುವ ಅಧಿಕಾರ.–** ಈ ಉದ್ದೇಶಕ್ಕಾಗಿ, ರಾಜ್ಯಸರ್ಕಾರದಿಂದ ಪ್ರಾಧಿಕೃತಗೊಂಡ 'ಎ' ಸಮೂಹದ ಅಧಿಕಾರಿ ದರ್ಜೆಗಿಂತ ಕಡಿಮೆಇಲ್ಲದ ದರ್ಜೆಯ ಯಾವೊಬ್ಬ ಅಧಿಕಾರಿಯು, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಶನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ 37) ಅಡಿಯಲ್ಲಿ ನಿರ್ದಿಷ್ಟಪಡಿಸಿರಬಹುದಾದ ಅಂಥ ಷರತ್ತುಗಳಿಗೆ ಒಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ, ಆ ಅಧಿನಿಯಮದ 9ನೇ ಪ್ರಕರಣದ ಅಡಿಯಲ್ಲಿ ಉಪಬಂಧಿಸಲಾದಂತಹವೇ ಅಧಿಕಾರಗಳನ್ನು ಚಲಾಯಿಸಲು ಮತ್ತು ಪ್ರಕಾರ್ಯಗಳನ್ನು ನೆರವೇರಿಸಲು ಅಧಿಕೃತನಾದ ಅಧಿಕಾರಿ ಎಂಬುದಾಗಿ ಭಾವಿಸತಕ್ಕದ್ದು.

**58. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ನಿರ್ದೇಶನವನ್ನು ನೀಡುವ ಅಧಿಕಾರ.–** (1) ವಿಶ್ವವಿದ್ಯಾಲಯವು ತನ್ನ ರಚನೆ ಅಥವಾ ನಿಗಮನವನ್ನು ನಿಯಂತ್ರಿಸುವ ಕಾನೂನಿಗೆ ಅನುಸಾರವಾಗಿ ತನ್ನ ಸಮಾಪನವನ್ನು ಉದ್ದೇಶಿಸಿದ್ದಲ್ಲಿ, ಅದು ಕನಿಷ್ಠ ಆರು ತಿಂಗಳ ಲಿಖಿತ ಪೂರ್ವ ಸೂಚನೆಯನ್ನು (ನೋಟಿಸು) ಸರ್ಕಾರಕ್ಕೆ ನೀಡತಕ್ಕದ್ದು.

(2) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಈ ಕೆಳಗಿನವುಗಳ ಬಗ್ಗೆ, ಎಂದರೆ:–

(i) ಪದವಿಯನ್ನು ನೀಡುವುದಕ್ಕಾಗಿ ಬೋಧನೆಯ ಗುಣಮಟ್ಟ;

(ii) ಶಿಕ್ಷಣದ ಗುಣಮಟ್ಟ;

(iii) ಉನ್ನತ ಶಿಕ್ಷಣದ ವ್ಯಾಪಾರೀಕರಣವನ್ನು ತಡೆಗಟ್ಟುವುದು;

(iv) ಅಧಿನಿಯಮದ ಉಪಬಂಧಗಳ ಉಲ್ಲಂಘನೆಯ ಬಗ್ಗೆ, ಯಾವುದಾದರೂ ಇದ್ದಲ್ಲಿ,

– ಇವುಗಳ ಬಗ್ಗೆ ನಿಯತಕಾಲಿಕ ಪರಿವೀಕ್ಷಣೆಯನ್ನು ನಡೆಸತಕ್ಕದ್ದು ಮತ್ತು ಸರ್ಕಾರಕ್ಕೆ ವರದಿಯನ್ನು ಕಳುಹಿಸತಕ್ಕದ್ದು.

(3) ದುರ್ವ್ಯವಹರಣೆ, ದುರಾಡಳಿತ ಮತ್ತು ಅಶಿಸ್ತು ಆಗಿದೆ ಎಂಬುದನ್ನು ಗುರುತಿಸಿದರೆ, ಸರ್ಕಾರವು, ವಿಶ್ವವಿದ್ಯಾಲಯದ ಆಡಳಿತವರ್ಗದವರಿಗೆ ಆಡಳಿತವನ್ನು ಸರಿಪಡಿಸಬೇಕೆಂದು ನಿರ್ದೇಶನಗಳನ್ನು ನೀಡತಕ್ಕದ್ದು. ನಿಯಮಿಸಬಹುದಾದ ಅಂಥ ಅವಧಿಯೊಳಗೆ ಆ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುವ ಹಕ್ಕು ಸರ್ಕಾರದಲ್ಲಿ ನಿಹಿತವಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ವಿಧಾನವು, ಸರ್ಕಾರವು ಈ ಸಂಬಂಧದಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು:

ಪರಂತು, ವಿಶ್ವವಿದ್ಯಾಲಯವು ತನ್ನ ಕಾರಣಗಳನ್ನು ಹೇಳಿಕೊಳ್ಳಲು ಸಮಂಜಸ ಅವಕಾಶಗಳನ್ನು ನೀಡಿದ ಹೊರತು ಅಂಥ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

(5) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೋಟಿಸನ್ನು ಸ್ವೀಕರಿಸಿದ ಮೇಲೆ, ಸರ್ಕಾರವು ಸಂಬಂಧಿಸಿದ ನಿಯಂತ್ರಣಾ ಪ್ರಾಧಿಕಾರದೊಡನೆ ಸಮಾಲೋಚಿಸಿ, ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ಅಥವಾ ವ್ಯಾಸಂಗ ಕ್ರಮವನ್ನು ಪರಿಸಮಾಪನಗೊಳಿಸಲು ಉದ್ದೇಶಿಸಿದ ದಿನಾಂಕದಿಂದ, ವಿಶ್ವವಿದ್ಯಾಲಯದಲ್ಲಿ ನಿಯತ ವ್ಯಾಸಂಗ ಕ್ರಮಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕೊನೆಯ ತಂಡ (ಬ್ಯಾಚ್) ತನ್ನ ವ್ಯಾಸಂಗ ಕ್ರಮವನ್ನು ಮುಗಿಸುವವರೆಗೆ ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು.

**59. ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು.–** (1) 58ನೇ ಪ್ರಕರಣದ (5)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ಅದರ ಆಡಳಿತಾತ್ಮಕ ವೆಚ್ಚಗಳನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ನೇಮಿಸಬಹುದಾದ ಅಂಥ ವಿಧಾನದಲ್ಲಿ ಭರಿಸತಕ್ಕದ್ದು.

(2) ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ವಿಶ್ವವಿದ್ಯಾಲಯದ ವೆಚ್ಚವನ್ನು ಭರಿಸಲು 47, 48, 49, ಮತ್ತು 50ನೇ ಪ್ರಕರಣಗಳ ಅಡಿಯಲ್ಲಿ ಉಲ್ಲೇಖಿಸಲಾದ ನಿಧಿಯು ಸಾಕಷ್ಟು ಇಲ್ಲದಿದ್ದಲ್ಲಿ, ಅಂಥ ವೆಚ್ಚವನ್ನು ಸರ್ಕಾರವು, ವಿಶ್ವವಿದ್ಯಾಲಯದ ಸ್ವತ್ತುಗಳು ಮತ್ತು ಆಸ್ತಿಗಳನ್ನು ವಿಲೇ ಮಾಡುವ ಮೂಲಕ ಭರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಸಮಾಪನೆಯು ದುರ್ವ್ಯವಹರಣೆ ಅಥವಾ ದುರಾಡಳಿತದ ಕಾರಣಗಳಿಗಾಗಿ ಆಗಿದ್ದರೆ, ಸರ್ಕಾರವು ಅಂಥ ದುರ್ವ್ಯವಹಾರಕ್ಕೆ ಅಥವಾ ದುರಾಡಳಿತಕ್ಕೆ ಹೊಣೆಯಾಗಿರುವ ವ್ಯಕ್ತಿಗಳನ್ನು ಗುರುತಿಸುವ ಮತ್ತು ಅವರ ಮೇಲೆ ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ದಂಡನೆಯನ್ನು ವಿಧಿಸಲು ಸ್ವತಂತ್ರವಾಗಿರತಕ್ಕದ್ದು.

**60. ತೊಂದರೆಗಳ ನಿವಾರಣೆಗೆ ಅಧಿಕಾರ.–** (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಅಥವಾ ಆದೇಶದ ಮೂಲಕ ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಐದು ವರ್ಷಗಳು ಮುಕ್ತಾಯವಾದ ತರುವಾಯ ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಅಧಿಸೂಚನೆ ಅಥವಾ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

**61. ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ.–** (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ಹೊರಡಿಸಲಾದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಉಭಯ ಸದನಗಳು ಒಪ್ಪಿದರೆ ತದನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ದತಿಯು ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವನ್ನು ಉಂಟುಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

**ಜಿ.ಕೆ. ಬೋರೇಗೌಡ**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) (500 ಪ್ರತಿಗಳು)

I No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ


| | | |
|---|---|---|
| ಭಾಗ - IV-A | ಬೆಂಗಳೂರು, ಗುರುವಾರ, ಫೆಬ್ರವರಿ ೭, ೨೦೧೩ (ಮಾಘ ೧೮, ಶಕ ವರ್ಷ ೧೯೩೪) | ನಂ. ೧೫೩ |
| Part - IV-A | Bangalore, Thursday, February 7, 2013 (Magha 18, Shaka Varsha 1934) | No. 153 |


## ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ

### ಅಧಿಸೂಚನೆ

**ಸಂಖ್ಯೆ: ಸಂವ್ಯಶಾಇ 80 ಶಾಸನ 2012, ಬೆಂಗಳೂರು, ದಿನಾಂಕ: 07.02.2013**

ರೇವಾ ವಿಶ್ವವಿದ್ಯಾಲಯ ವಿಧೇಯಕ, 2012-ಇದಕ್ಕೆ 2013ರ ಫೆಬ್ರವರಿ ತಿಂಗಳ ಐದನೇ ದಿನಾಂಕದಂದು ಘನತೆವೆತ್ತ ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2013ರ ಕರ್ನಾಟಕ ಅಧಿನಿಯಮ ಸಂಖ್ಯೆ: 13 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2013 ರ ಕರ್ನಾಟಕ ಅಧಿನಿಯಮ ಸಂಖ್ಯೆ: 13**

(2013ರ ಫೆಬ್ರವರಿ ಮಾಹೆಯ ಏಳನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ರೇವಾ ವಿಶ್ವವಿದ್ಯಾಲಯ ಅಧಿನಿಯಮ, 2012**

(2013ರ ಫೆಬ್ರವರಿ ಮಾಹೆಯ ಐದನೇ ದಿನಾಂಕದಂದು ರಾಜ್ಯಪಾಲರ ಅನುಮತಿಯನ್ನು ಪಡೆಯಲಾಗಿದೆ)

ಕಲೆ, ವಿಜ್ಞಾನ, ವಾಣಿಜ್ಯ, ಕಾನೂನು, ಇಂಜಿನಿಯರಿಂಗ್, ಮಾನವಿಕ ವಿಷಯಗಳು, ವೈದ್ಯಕೀಯ, ಔಷಧ ವಿಜ್ಞಾನ, ತತ್ಸಂಬಂಧಿತ ಆರೋಗ್ಯ ವಿಜ್ಞಾನಗಳು, ವ್ಯವಹಾರ ಆಡಳಿತ ನಿರ್ವಹಣೆ, ಕೃಷಿ, ಶಿಕ್ಷಣ ಮತ್ತು ಅಂಥ ವಿಷಯಗಳಲ್ಲಿ ಪದವಿ, ಸ್ನಾತಕೋತ್ತರ, ಡಾಕ್ಟೋರೇಟ್ ಪದವಿ (doctoral) ಮತ್ತು ಡಾಕ್ಟೋರೇಟ್ ಪದವಿ ನಂತರದ ವ್ಯಾಸಂಗ ವಿಷಯಗಳ ಕೋರ್ಸುಗಳವರೆಗೆ ಮತ್ತು ಅವುಗಳನ್ನು ಒಳಗೊಂಡಂತೆ ತತ್ಸಂಬಂಧಿ ವಲಯಗಳಲ್ಲಿ ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಉತ್ತೇಜಿಸಲು ಮತ್ತು ಕೈಗೊಳ್ಳಲು ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದಕ್ಕಾಗಿ ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕಲೆ, ವಿಜ್ಞಾನ, ವಾಣಿಜ್ಯ, ಕಾನೂನು, ಇಂಜಿನಿಯರಿಂಗ್, ಮಾನವಿಕ ವಿಷಯಗಳು, ವೈದ್ಯಕೀಯ, ಔಷಧ ವಿಜ್ಞಾನ, ತತ್ಸಂಬಂಧಿತ ಆರೋಗ್ಯ ವಿಜ್ಞಾನಗಳು, ವ್ಯವಹಾರ ಆಡಳಿತ ನಿರ್ವಹಣೆ, ಕೃಷಿ, ಶಿಕ್ಷಣ ಮತ್ತು ಅಂಥ ವಿಷಯಗಳಲ್ಲಿ ಪದವಿ, ಸ್ನಾತಕೋತ್ತರ, ಡಾಕ್ಟೋರೇಟ್ ಪದವಿ (doctoral) ಮತ್ತು ಡಾಕ್ಟೋರೇಟ್ ಪದವಿ ನಂತರದ ವ್ಯಾಸಂಗ ವಿಷಯಗಳ ಕೋರ್ಸುಗಳವರೆಗೆ ಮತ್ತು ಅವುಗಳನ್ನು ಒಳಗೊಂಡಂತೆ ತತ್ಸಂಬಂಧಿ ವಲಯಗಳಲ್ಲಿ ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಉತ್ತೇಜಿಸಲು ಮತ್ತು ಕೈಗೊಳ್ಳಲು ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೂರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

## ಅಧ್ಯಾಯ - I

### ಪ್ರಾರಂಭಿಕ

1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.- (1) ಈ ಅಧಿನಿಯಮವನ್ನು ರೇವಾ ವಿಶ್ವವಿದ್ಯಾಲಯ ಅಧಿನಿಯಮ, 2012 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. ಪರಿಭಾಷೆಗಳು.**- ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) "ಶೈಕ್ಷಣಿಕ ಪರಿಷತ್ತು (ಅಕೆಡೆಮಿಕ್ ಕೌನ್ಸಿಲ್)" ಎಂದರೆ, 25ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿಸಲಾದ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು;

(ಬಿ) "ಕಾರ್ಯಸೂಚಿ ವಿಷಯಗಳು", ಎಂದರೆ, ಪರಿನಿಯಮಗಳಲ್ಲಿ ಹೆಸರಿಸಬಹುದಾದ ಮತ್ತು ಒಂದು ಸಭೆಯಲ್ಲಿ ಆ ವಿಷಯಗಳನ್ನು ಮತ್ತು ಕಲಾಪಗಳನ್ನು ಅನುಮೋದಿಸಬಹುದೆಂದು ತಮ್ಮ ಸಮ್ಮತಿ ಸೂಚಿಸಿ ಕುಲಾಧಿಪತಿಯವರು ಮುಂಚಿತವಾಗಿಯೇ ಲಿಖಿತ ಅನುಮೋದನೆಯನ್ನು ಕೊಟ್ಟಿದ್ದಾಗ ಮಾತ್ರವೇ ಸಂದರ್ಭಾನುಸಾರ ಪ್ರಬಂಧಕರ ಮಂಡಳಿ ಅಥವಾ ವ್ಯವಸ್ಥಾಪನಾ ಮಂಡಳಿ ಅಥವಾ ಯಾವುದೇ ಸಮಿತಿಯವರು ಕಾರ್ಯಸೂಚಿಯಲ್ಲಿ ಸೇರಿಸಬಹುದಾದ ಅಥವಾ ಸಭೆಯಲ್ಲಿ ಚರ್ಚೆಗೆ ತೆಗೆದುಕೊಂಡು ನಿರ್ಣಯವನ್ನು ಕೊಡಬಹುದಾದ ಎಲ್ಲಾ ವಿಷಯಗಳು ಮತ್ತು ಕಲಾಪಗಳು;

(ಸಿ) "ಪ್ರಬಂಧಕರ ಮಂಡಳಿ" ಎಂದರೆ, 23ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಪ್ರಬಂಧಕರ ಮಂಡಳಿ;

(ಡಿ) "ವ್ಯವಸ್ಥಾಪನಾ ಮಂಡಳಿ" ಎಂದರೆ, 24ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಆಡಳಿತ ಮಂಡಳಿ;

(ಇ) "ಕುಲಾಧಿಪತಿ", "ಕುಲಪತಿ", "ಸಹಕುಲಪತಿ" ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ ಮತ್ತು ಸಹಕುಲಪತಿ;

(ಎಫ್) "ಕ್ಯಾಂಪಸ್" ಎಂದರೆ, ಅದು ಎಲ್ಲಾದರೂ ಇರಲಿ ವಿಶ್ವವಿದ್ಯಾಲಯವು ಸ್ಥಾಪಿಸಿದ, ನಿರ್ವಹಿಸುವ ಒಂದು ಕ್ಯಾಂಪಸ್;

(ಜಿ) "ಸಮಿತಿಗಳು" ಎಂದರೆ, ಈ ಅಧಿನಿಯಮದಡಿಯಲ್ಲಿ ರೂಪಿಸಲಾದ ಸಮಿತಿಗಳು ಅಥವಾ ಸಂದರ್ಭಾನುಸಾರವಾಗಿ ವಿಶ್ವವಿದ್ಯಾಲಯದ ವಿವಿಧ ಕಾರ್ಯಕರ್ತರು ರಚಿಸಿರುವ ಸಮಿತಿಗಳು ಮತ್ತು ಅದರಲ್ಲಿ ನಾಮನಿರ್ದೇಶನ ಸಮಿತಿ, ಹಣಕಾಸು ಸಮಿತಿ, ದೂರಶಿಕ್ಷಣ ಸಮಿತಿ ಮತ್ತು ಅಂಥ ಇತರ ಸಮಿತಿಗಳು ಒಳಗೊಳ್ಳುತ್ತವೆ;

(ಎಚ್) "ಘಟಕ ಕಾಲೇಜು" ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುತ್ತಿರುವ ಒಂದು ಕಾಲೇಜು ಅಥವಾ ಸಂಸ್ಥೆ;

(ಐ) "ಹಣಕಾಸು ಸಮಿತಿ" ಎಂದರೆ, 27ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಹಣಕಾಸು ಸಮಿತಿ;

(ಜೆ) "ಸರ್ಕಾರ" ಎಂದರೆ, ಕರ್ನಾಟಕ ಸರ್ಕಾರ;

(ಕೆ) "ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳು" ಎಂದರೆ, ವಿಶ್ವವಿದ್ಯಾಲಯ ಅನುದಾನ ಆಯೋಗ, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು, ಭಾರತೀಯ ವೈದ್ಯಕೀಯ ಪರಿಷತ್ತು, ಭಾರತೀಯ ಔಷಧ ವಿಜ್ಞಾನ ಪರಿಷತ್ತು, ಭಾರತೀಯ ಕೃಷಿ ಸಂಶೋಧನಾ ಪರಿಷತ್ತು, ರಾಷ್ಟ್ರೀಯ ಮೌಲ್ಯಮಾಪನ ಮತ್ತು ಅಧಿಮಾನ್ಯತಾ ಪರಿಷತ್ತು, ರಾಷ್ಟ್ರೀಯ ಬೋಧಕ ಶಿಕ್ಷಣ ಪರಿಷತ್ತು, ದೂರಶಿಕ್ಷಣ ಪರಿಷತ್ತು, ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಪರಿಷತ್ತು ಮುಂತಾದ, ಉನ್ನತ ಶಿಕ್ಷಣದಲ್ಲಿ ಗುಣಮಟ್ಟದ ಶಿಕ್ಷಣ

ದೊರೆಯುವಂತೆ ನೋಡಿಕೊಳ್ಳುವುದಕ್ಕಾಗಿ ಗುಣಮಟ್ಟಗಳು ಮತ್ತು ಷರತ್ತುಗಳನ್ನು ವಿಧಿಸುವುದಕ್ಕಾಗಿ, ಕೇಂದ್ರ ಸರ್ಕಾರವು ಸ್ಥಾಪಿಸಿರುವ ಒಂದು ಸಂಸ್ಥೆ ಮತ್ತು ಇದರಲ್ಲಿ ಸರ್ಕಾರವೂ ಸೇರಿರುತ್ತದೆ;

(ಎಲ್) "ನಿಯಮಿಸಲಾದುದು" ಎಂದರೆ, ಈ ಅಧಿನಿಯಮದಡಿಯಲ್ಲಿ ಸರ್ಕಾರವು ರಚಿಸಲಾದ ನಿಯಮಗಳ ಮೂಲಕ ನಿಯಮಿಸಲಾದುದು;

(ಎಂ) "ಒಂದು ಘಟಕ ಕಾಲೇಜಿಗೆ ಸಂಬಂಧಪಟ್ಟಂತೆ ಪ್ರಾಂಶುಪಾಲರು" ಎಂದರೆ, ಘಟಕ ಕಾಲೇಜಿನ ಮುಖ್ಯಸ್ಥರು ಮತ್ತು ಪ್ರಾಂಶುಪಾಲರು ಇಲ್ಲದಿದ್ದಲ್ಲಿ ಅಥವಾ ನೇಮಕವಾದ ಪ್ರಾಂಶುಪಾಲರ ಗೈರುಹಾಜರಿಯಲ್ಲಿ, ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ತಾತ್ಕಾಲಿಕವಾಗಿ ನೇಮಕಗೊಂಡಿರುವ ಉಪಪ್ರಾಂಶುಪಾಲರು ಅಥವಾ ಯಾವುದೇ ಇತರ ವ್ಯಕ್ತಿಯೂ ಇದರಲ್ಲಿ ಒಳಗೊಳ್ಳುತ್ತಾರೆ;

(ಎನ್) "ಕುಲಸಚಿವರು" ಎಂದರೆ, ವಿಶ್ವವಿದ್ಯಾಲಯದ ಕುಲಸಚಿವರು;

(ಒ) "ಪ್ರಾದೇಶಿಕ ಕೇಂದ್ರ" ಎಂದರೆ, ಯಾವುದೇ ಪ್ರದೇಶದಲ್ಲಿನ ಅಧ್ಯಯನ ಕೇಂದ್ರಗಳ ಕಾರ್ಯವನ್ನು ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ಮಾಡುವ ಉದ್ದೇಶಕ್ಕಾಗಿ ಮತ್ತು ಅಂಥ ಕೇಂದ್ರಕ್ಕೆ ವ್ಯವಸ್ಥಾಪನಾ ಮಂಡಳಿಯು ವಹಿಸಿಕೊಡಬಹುದಾದ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸುವುದಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಅಥವಾ ನಿರ್ವಹಿಸಿಕೊಂಡುಬರುವ ಒಂದು ಕೇಂದ್ರ;

(ಪಿ) ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ "ಪ್ರಾಯೋಜಕ ಪ್ರಾಧಿಕಾರ" ಅಥವಾ "ಪ್ರಾಯೋಜಕ ಸಂಸ್ಥೆ" ಎಂದರೆ, ನ್ಯಾಸ;

(ಕ್ಯೂ) "ರಾಜ್ಯ" ಎಂದರೆ, ಕರ್ನಾಟಕ ರಾಜ್ಯ;

(ಆರ್) "ಪರಿನಿಯಮಗಳು" ಮತ್ತು "ವಿನಿಯಮಗಳು" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಅನುಕ್ರಮವಾಗಿ ವಿಶ್ವವಿದ್ಯಾಲಯದ ಪರಿನಿಯಮಗಳು ಮತ್ತು ವಿನಿಯಮಗಳು;

(ಎಸ್) "ಅಧ್ಯಯನ ಕೇಂದ್ರ" ಎಂದರೆ, ವಿದ್ಯಾರ್ಥಿಗಳಿಗೆ ಅಗತ್ಯವಾದ ಬುದ್ಧಿವಾದ, ಸಲಹೆಗಳನ್ನು ನೀಡುವ ಅಥವಾ ಇತರ ಯಾವುದೇ ನೆರವನ್ನು ನೀಡುವ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಮತ್ತು ನಿರ್ವಹಿಸಿಕೊಂಡುಬಂದ ಒಂದು ಕೇಂದ್ರ;

(ಟಿ) "ಅಧ್ಯಾಪಕರು" ಎಂದರೆ, ಒಬ್ಬ ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಒಂದು ಘಟಕ ಕಾಲೇಜಿನಲ್ಲಿ ಬೋಧಿಸುವುದಕ್ಕೆ ಅಥವಾ ಸಂಶೋಧನೆ ನಡೆಸುವುದಕ್ಕೆ ಅಥವಾ ಸಂಶೋಧನೆಗೆ ಮಾರ್ಗದರ್ಶನ ನೀಡುವುದಕ್ಕೆ ನೇಮಕವಾದ ಅಂಥ ಇತರ ವ್ಯಕ್ತಿ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗವು ನಿಯಮಿಸಿದ ಗುಣಮಟ್ಟಗಳಿಗೆ ಅನುಸಾರವಾಗಿ ಇರುವ ಘಟಕ ಕಾಲೇಜಿನ ಪ್ರಾಂಶುಪಾಲರು ಇದರಲ್ಲಿ ಒಳಗೊಳ್ಳುತ್ತಾರೆ;

(ಯು) "ನ್ಯಾಸ" ಎಂದರೆ ರುಕ್ಮಿಣಿ ಶೈಕ್ಷಣಿಕ ಮತ್ತು ಧರ್ಮಾರ್ಥ ನ್ಯಾಸ ಇದು ನೋಂದಾಯಿತ ನ್ಯಾಸವಾಗಿದ್ದು ಮತ್ತು ಪ್ರಾಯೋಗಿಕ ಸಂಸ್ಥೆಯಾಗಿದೆ;

(ವಿ) "ವಿಶ್ವವಿದ್ಯಾಲಯ ಅನುದಾನಗಳ ಆಯೋಗ" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) 4ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ಆಯೋಗ;

(ಡಬ್ಲ್ಯೂ) "ವಿಶ್ವವಿದ್ಯಾಲಯ" ಎಂದರೆ, ಈ ಅಧಿನಿಯಮದಡಿಯಲ್ಲಿ ಸ್ಥಾಪಿಸಿ ನಿಗಮಿತಗೊಳಿಸಲಾದ ರೇವಾ ವಿಶ್ವವಿದ್ಯಾಲಯ;

(ಎಕ್ಸ್) "ಸಂದರ್ಶಕರು" ಎಂದರೆ, 13ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ವಿಶ್ವವಿದ್ಯಾಲಯದ ಸಂದರ್ಶಕರು.

## ಅಧ್ಯಾಯ– II

## ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

3. **ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ.–** (1) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಹಕ್ಕನ್ನು ನ್ಯಾಸವು ಹೊಂದಿರತಕ್ಕದ್ದು.

(2) ನ್ಯಾಸವು ರಾಜ್ಯ ಸರ್ಕಾರಕ್ಕೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವವನ್ನು ಸಲ್ಲಿಸತಕ್ಕದ್ದು.

2

(3) ಪ್ರಸ್ತಾವನೆಯು ಈ ಮುಂದಿನ ವಿವರಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ನ್ಯಾಸದ ವಿವರಗಳೊಂದಿಗೆ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು;

(ii) ವಿಶ್ವವಿದ್ಯಾಲಯದ ವ್ಯಾಪ್ತಿ ಮತ್ತು ಸ್ಥಾನಮಾನ ಹಾಗೂ ಭೂಮಿಯ ಲಭ್ಯತೆ;

(iii) ಪ್ರಾರಂಭದ ದಿನಾಂಕದಿಂದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳಬೇಕೆಂದಿರುವ ಅಧ್ಯಯನ ಮತ್ತು ಸಂಶೋಧನಾ ಕಾರ್ಯಕ್ರಮಗಳ ಸ್ವರೂಪ ಮತ್ತು ಬಗೆಗಳು;

(iv) ಪ್ರಾರಂಭಿಸಬೇಕೆಂದು ಪ್ರಸ್ತಾಪಿಸಿರುವ ವ್ಯಾಸಂಗ ವಿಭಾಗಗಳು (ಫ್ಯಾಕಲ್ಟಿಗಳು), ಅಧ್ಯಯನ ಕ್ರಮಗಳು ಮತ್ತು ಸಂಶೋಧನೆಗಳ ಸ್ವರೂಪ;

(v) ಕಟ್ಟಡಗಳು, ಸಲಕರಣೆಗಳು ಮತ್ತು ರಚನಾ ಸೌಕರ್ಯಗಳನ್ನು ಒದಗಿಸುವಂಥ ಕ್ಯಾಂಪಸ್ ಅಭಿವೃದ್ಧಿ;

(vi) ಪ್ರಾರಂಭದ ದಿನಾಂಕದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಗಾಗಿ ಬಂಡವಾಳ ವೆಚ್ಚದ ಹಂತಗಳು;

(vii) ಬಾಬುವಾರು ಆವರ್ತಕ ವೆಚ್ಚ, ಆರ್ಥಿಕ ಮೂಲಗಳು ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ತಗಲುವ ಅಂದಾಜು ವೆಚ್ಚ;

(viii) ಸಂಪನ್ಮೂಲ ಸಂಗ್ರಹಣೆಗಾಗಿ ಯೋಜನೆ ಮತ್ತು ಅದಕ್ಕೆ ಬಂಡವಾಳದಿಂದ ತಗಲುವ ವೆಚ್ಚ ಹಾಗೂ ಪ್ರತಿಯೊಂದು ಮೂಲಕ್ಕೂ ಮರು ಸಂದಾಯ ಮಾಡುವ ರೀತಿ;

(ix) ವಿದ್ಯಾರ್ಥಿಗಳಿಂದ ಶುಲ್ಕ ವಸೂಲು ಮಾಡಿ ಆಂತರಿಕವಾಗಿ ನಿಧಿ ಸಂಗ್ರಹಿಸುವ ಯೋಜನೆ, ಸಲಹಾ ಸೇವೆ ಮತ್ತು ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಿಗೆ ಸಂಬಂಧಿಸಿದ ಇತರ ಚಟುವಟಿಕೆಗಳಿಂದ ನಿರೀಕ್ಷಿತ ವರಮಾನಗಳು ಮತ್ತು ಇತರ ನಿರೀಕ್ಷಿತ ವರಮಾನಗಳು;

(x) ಘಟಕವೊಂದಕ್ಕೆ ತಗಲುವ ವೆಚ್ಚದ ವಿವರಗಳು, ಆರ್ಥಿಕವಾಗಿ ದುರ್ಬಲವಾದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕ, ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿ ವೇತನದಲ್ಲಿ ನೀಡುವ ರಿಯಾಯಿತಿ ಅಥವಾ ವಿನಾಯತಿಯ ಪರಿಮಿತಿಯ ವಿವರಗಳನ್ನು ಮತ್ತು ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳಿಗೆ ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳು ಪ್ರಾಯೋಜಿಸಿದ ವಿದ್ಯಾರ್ಥಿಗಳಿಗೆ ಮತ್ತು ಭಾರತವನ್ನುಳಿದು ಇತರ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ವಿಧಿಸತಕ್ಕ ಶುಲ್ಕದ ದರಗಳು ಬೇರೆ ಬೇರೆ ಇದ್ದಲ್ಲಿ ಅವುಗಳನ್ನು ಸೂಚಿಸುವ ಶುಲ್ಕ ರಚನೆಯ ವಿವರಗಳು;

(xi) ಸಂಬಂಧಪಟ್ಟ ವಿದ್ಯಾ ವಿಭಾಗದಲ್ಲಿ ಎಷ್ಟು ವರ್ಷಗಳ ಅನುಭವ ಮತ್ತು ಪರಿಣತಿಯನ್ನು ನ್ಯಾಸವು ದೊರಕಿಸಿಕೊಡಲಿದೆ ಹಾಗೂ ಅದರ ಹಣಕಾಸಿನ ಸಂಪನ್ಮೂಲಗಳು;

(xii) ವಿಶ್ವವಿದ್ಯಾಲಯದಲ್ಲಿರುವ ಅಧ್ಯಯನ ಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕಾಗಿ ಇರುವ ವ್ಯವಸ್ಥೆ;

(xiii) ವಿಶ್ವವಿದ್ಯಾಲಯವು ಸ್ಥಾಪನೆಯಾಗುವುದಕ್ಕೆ ಮೊದಲು ನೆರವೇರಿಸಬೇಕೆಂದು ರಾಜ್ಯ ಸರ್ಕಾರವು ಅಗತ್ಯಪಡಿಸಬಹುದಾದ ಅಂಥ ಇತರ ಷರತ್ತುಗಳ ನೆರವೇರಿಕೆಯ ಹಂತ.

(4) ಸ್ವೀಕರಿಸಿದ ಪ್ರಸ್ತಾವಗಳನ್ನು ಪರೀಕ್ಷಿಸಲು ರಾಜ್ಯ ಸರ್ಕಾರವು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಪದನಿಮಿತ್ತ ಸದಸ್ಯರಾದ ಮೂರು ಸದಸ್ಯರುಗಳನ್ನು ಒಳಗೊಂಡ ಒಂದು ಪರಿಶೋಧನಾ ಸಮಿತಿಯನ್ನು ರಚಿಸತಕ್ಕದ್ದು ಮತ್ತು ಅದು ರಾಜ್ಯ ಸರ್ಕಾರಕ್ಕೆ ಶಿಫಾರಸ್ಸನ್ನು ಮಾಡತಕ್ಕದ್ದು.

**4. ವಿಶ್ವವಿದ್ಯಾಲಯದ ಸ್ಥಾಪನೆ.-** (1) ರಾಜ್ಯ ಸರ್ಕಾರವು ಪರಿಶೋಧನಾ ಸಮಿತಿಯು ಮಾಡಿದ ಶಿಫಾರಸ್ಸುಗಳನ್ನು ಪರಿಶೀಲಿಸಿದ ತರುವಾಯ ಮತ್ತು ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ,-

(i) ನ್ಯಾಸವು ಸಾಕಷ್ಟು ಮೂಲ ಸೌಕರ್ಯದೊಂದಿಗೆ ವಿಶ್ವವಿದ್ಯಾಲಯವೊಂದನ್ನು ನಡೆಸಲು ಸಮರ್ಥವಾಗಿದೆ ಎಂದು ಅದು ಮನಗಂಡರೆ;

(ii) ಪ್ರದೇಶಕ್ಕನುಸಾರವಾಗಿ ಕೆಳಗೆ ನಿರ್ದಿಷ್ಟ ಪಡಿಸಿದ ವ್ಯಾಪ್ತಿಗೆ ಭೂಮಿಯ ಒಡೆತನವನ್ನು ಹೊಂದಿರತಕ್ಕದ್ದು, ಎಂದರೆ:-

(ಎ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯೊಳಗಿದ್ದರೆ ಇಪ್ಪತ್ತೈದು ಎಕರೆಗಳು;

(ಬಿ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯಿಂದ ಹೊರಗೆ ಇದ್ದು, ಆದರೆ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಪ್ರದೇಶದ ಒಳಗೆ ಇದ್ದರೆ ನಲವತ್ತು ಎಕರೆಗಳು;

(ಸಿ) ಭೂಮಿಯು (ಎ) ಮತ್ತು (ಬಿ) ಖಂಡಗಳಲ್ಲಿ ನಿರ್ದಿಷ್ಟಪಡಿಸಿದ ಸ್ಥಳಗಳನ್ನು ಹೊರತುಪಡಿಸಿದ್ದರೆ ಅರವತ್ತು ಎಕರೆಗಳಿಗಿಂತ ಕಡಿಮೆ ಇರತಕ್ಕದ್ದಲ್ಲ.

ಮೇಲೆ ನಿರ್ದಿಷ್ಟಪಡಿಸಿದ ಭೂಮಿಯು ಏಕ ಘಟಕ(ಸಿಂಗಲ್ ಬ್ಲಾಕ್) ದಲ್ಲಿರತಕ್ಕದ್ದು ಮತ್ತು ಇದು ಸಂಬಂಧಪಟ್ಟ ನ್ಯಾಸ / ಪ್ರತಿಷ್ಠಾನ / ಸಂಸ್ಥೆ / ವಿಶ್ವವಿದ್ಯಾಲಯದ ಹೆಸರಿನಲ್ಲಿರತಕ್ಕದ್ದು. 3ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ಅಗತ್ಯಪಡಿಸಲಾದಂತೆ ನ್ಯಾಸವು ಒದಗಿಸಿದ ವಿವರಗಳ ಆಧಾರದ ಮೇಲೆ ಸರ್ಕಾರವು 47ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಬೇಕೆಂದು ನ್ಯಾಸಕ್ಕೆ ನಿರ್ದೇಶನ ನೀಡಬಹುದು.

(2) ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಸ್ಥಾಪನೆಯ ತರುವಾಯ, ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, "ರೇವಾ ವಿಶ್ವವಿದ್ಯಾಲಯ" ಎಂಬ ಹೆಸರಿನ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ರಾಜ್ಯದಲ್ಲಿ ಸ್ಥಾಪಿಸುವುದಕ್ಕೆ ಮಂಜೂರಾತಿಯನ್ನು ನೀಡಬಹುದು.

(3) ವಿಶ್ವವಿದ್ಯಾಲಯದ ಕೇಂದ್ರ ಕಾರ್ಯಸ್ಥಾನವು ಬೆಂಗಳೂರು ಜಿಲ್ಲೆಯಲ್ಲಿ ಇರತಕ್ಕದ್ದು, ವಿಶ್ವವಿದ್ಯಾಲಯವು ತನ್ನ ಕ್ಯಾಂಪಸ್ಸುಗಳನ್ನು ಅಥವಾ ಪ್ರಾದೇಶಿಕ ಕೇಂದ್ರಗಳನ್ನು, ಅಧ್ಯಯನ ಕೇಂದ್ರಗಳನ್ನು ಕರ್ನಾಟಕದ ಯಾವುದೇ ಭಾಗದಲ್ಲಿ ಹೊಂದಿರತಕ್ಕದ್ದು ಮತ್ತು ಆ ಬಗ್ಗೆ ರಾಜ್ಯ ಸರ್ಕಾರದ ಪೂರ್ವಾನುಮತಿಯನ್ನು ಪಡೆದುಕೊಳ್ಳುವುದಕ್ಕೊಳಪಟ್ಟು ಹಾಗೂ ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗನುಸಾರವಾಗಿ ಹೊಂದಿರತಕ್ಕದ್ದು.

(4) ಮೊದಲ ಕುಲಾಧಿಪತಿಯವರು, ಮೊದಲ ಕುಲಪತಿಯವರು, ಪ್ರಬಂಧಕ ಮಂಡಳಿಯ ಮೊದಲ ಸದಸ್ಯರುಗಳು, ವ್ಯವಸ್ಥಾಪನಾ ಮಂಡಳಿಯ ಹಾಗೂ ಶೈಕ್ಷಣಿಕ ಪರಿಷತ್ತಿನ ಮೊದಲ ಸದಸ್ಯರುಗಳು ಮತ್ತು ಇನ್ನು ಮುಂದೆ, ಅಂಥ ಅಧಿಕಾರಿಗಳು ಅಥವಾ ಸದಸ್ಯರುಗಳಾಗಬಹುದಾದಂಥ ಎಲ್ಲಾ ವ್ಯಕ್ತಿಗಳು, ಅಂಥ ಪದ ಅಥವಾ ಸದಸ್ಯತ್ವವನ್ನು ಹೊಂದಿರುವುದು ಮುಂದುವರೆಯುವವರೆಗೆ, ಒಂದು ನಿಗಮಿತ ನಿಕಾಯವನ್ನು ರಚಿಸತಕ್ಕದ್ದು. ಮತ್ತು ಅದು ವಿಶ್ವವಿದ್ಯಾಲಯದ ಹೆಸರಿನಲ್ಲಿ ದಾವೆ ಹೂಡಬಹುದು ಮತ್ತು ದಾವೆಗೊಳಗಾಗಬಹುದು.

(5) (2)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯವು ಸ್ಥಾಪನೆಗೆ ಮಂಜೂರಾತಿಯಾದ ಮೇಲೆ, ವಿಶ್ವವಿದ್ಯಾಲಯದ ಉದ್ದೇಶಕ್ಕಾಗಿ, ನ್ಯಾಸವು ಆರ್ಜಿಸಿದ, ಸೃಜಿಸಿದ, ಏರ್ಪಾಟು ಮಾಡಿಕೊಂಡ ಅಥವಾ ಕಟ್ಟಲ್ಪಟ್ಟ ಭೂಮಿ ಮತ್ತು ಇತರ ಸ್ಥಿರ ಮತ್ತು ಚರ ಸ್ವತ್ತು, ವಿಶ್ವವಿದ್ಯಾಲಯದಲ್ಲಿ ನಿಹಿತವಾಗಿರತಕ್ಕದ್ದು.

(6) ವಿಶ್ವವಿದ್ಯಾಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದ ಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂಥ ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

(7) ವಿಶ್ವವಿದ್ಯಾಲಯದಲ್ಲಿನ ಭೂಮಿ, ಕಟ್ಟಡ ಮತ್ತು ಇತರ ಸ್ವತ್ತುಗಳನ್ನು ವಿಶ್ವವಿದ್ಯಾಲಯದ ಉದ್ದೇಶಗಳಿಗೆ ಆನುಷಂಗಿಕವಾಗಿರುವುದನ್ನು ಹೊರತುಪಡಿಸಿ ಇತರ ಯಾವುದೇ ಉದ್ದೇಶಕ್ಕಾಗಿ ಬಳಸತಕ್ಕದ್ದಲ್ಲ.

**5. ಅನುದಾನಗಳು ಮತ್ತು ಹಣಕಾಸು ನೆರವು.–** ವಿಶ್ವವಿದ್ಯಾಲಯವು ಸ್ವಂತ ಧನಮೂಲ ಉಳ್ಳದ್ದಾಗಿರತಕ್ಕದ್ದು ಮತ್ತು ರಾಜ್ಯದಿಂದ ಅಥವಾ ರಾಜ್ಯದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಇತರ ಸಂಸ್ಥೆ ಅಥವಾ ನಿಗಮದಿಂದ ಯಾವುದೇ ನಿರ್ವಹಣಾ ಸಹಾಯ ಅನುದಾನ ಅಥವಾ ಯಾವುದೇ ಹಣಕಾಸು ನೆರವನ್ನು ಹಕ್ಕಿನಿಂದ ಕೇಳತಕ್ಕದ್ದಲ್ಲ ಅಥವಾ ಅದನ್ನು ಪಡೆಯಲು ಹಕ್ಕನ್ನು ಹೊಂದಿರತಕ್ಕದ್ದಲ್ಲ:

ಪರಂತು, ರಾಜ್ಯವು,–

(ಎ) ಇತರ ರಾಜ್ಯ ಸರ್ಕಾರದ ಸಂಘಟನೆಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿರುವಂಥದ್ದೇ ಸಂಶೋಧನೆ, ಅಭಿವೃದ್ಧಿ ಮತ್ತಿತರ ಚಟುವಟಿಕೆಗಳಿಗಾಗಿ; ಅಥವಾ

(ಬಿ) ಸರ್ಕಾರದಿಂದ ನೆರವನ್ನು ಪಡೆಯುವ ಯಾವುದೇ ನಿರ್ದಿಷ್ಟ ಸಂಶೋಧನೆ ಅಥವಾ ಕಾರ್ಯಕ್ರಮಗಳಿಗಾಗಿ; ಮತ್ತು

(ಸಿ) ರಾಜ್ಯ ಕಾರ್ಯನೀತಿಯ ಬದಲಾವಣೆಗೆ ಒಳಪಟ್ಟು ಅಥವಾ ಅನ್ಯಥಾ ಇದೇ ಬಗೆಯ ವಿಶ್ವವಿದ್ಯಾಲಯಗಳಿಗೆ ಅವಕಾಶವನ್ನು ಕಲ್ಪಿಸುವುದಕ್ಕೆ ಅಥವಾ ಅವುಗಳ ಪ್ರಯೋಜನಕ್ಕಾಗಿ,

– ಅನುದಾನದ ಮೂಲಕ ಅಥವಾ ಅನ್ಯಥಾ ಹಣಕಾಸು ಬೆಂಬಲವನ್ನು ಒದಗಿಸಬಹುದು:

ಮತ್ತು ಪರಂತು, ವಿಶ್ವವಿದ್ಯಾಲಯವು, ಯಾವುದೇ ಇತರ ಮೂಲದಿಂದ ಯಾವುದೇ ಆರ್ಥಿಕ ನೆರವನ್ನು ಸ್ವೀಕರಿಸಬಹುದು.

**6. ಘಟಕ ಕಾಲೇಜು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಅಥವಾ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದಕ್ಕೆ ಅಧಿಕಾರ.–** ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಐದು ವರ್ಷಗಳನ್ನು ಪೂರ್ಣಗೊಳಿಸಿದ ನಂತರ, ವಿಶ್ವವಿದ್ಯಾಲಯ ಅನುದಾನ ಆಯೋಗದ ಮತ್ತು ಇತರ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ಗುಣಮಟ್ಟಗಳಿಗೆ ಒಳಪಟ್ಟು, ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ, ವಿಶ್ವವಿದ್ಯಾಲಯವು, ರಾಜ್ಯದಲ್ಲಿ ತನಗೆ ಸೂಕ್ತವೆನಿಸುವಂಥ ಸ್ಥಳಗಳಲ್ಲಿ ಘಟಕ ಕಾಲೇಜುಗಳು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದಿರಬಹುದು.

**7. ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು.–** ವಿಶ್ವವಿದ್ಯಾಲಯವು, ತನ್ನ ಭವಿಷ್ಯದ್‌ದೃಷ್ಟಿ ಮತ್ತು ಧ್ಯೇಯೋದ್ದೇಶಗಳನ್ನು ಸಾಧಿಸಲು ಈ ಮುಂದಿನಂತೆ ವಿವಿಧ ಬಗೆಯ ಕಾರ್ಯತಂತ್ರಗಳನ್ನು ಕೈಗೊಳ್ಳಬಹುದು:–

(i) ಪ್ರಜ್ಞಾವಂತ ಸಮಾಜದ ಸೃಜನೆಗಾಗಿ ಸಾಮಾಜಿಕವಾದ ಸುಸಂಬದ್ಧ ಅವಶ್ಯಕತೆಗಳನ್ನು ಗಮನದಲ್ಲಿಟ್ಟುಕೊಂಡು ಸಂಶೋಧನೆ ಮತ್ತು ಬೋಧನೆಗಾಗಿ ಸುಭದ್ರ ನೆಲೆಗಟ್ಟನ್ನು ರೂಪಿಸುವುದು;

(ii) ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ನ್ಯಾಸಧಾರಿಗಳು ಯುಕ್ತವೆಂದು ಭಾವಿಸಬಹುದಾದಂಥ ಕಲೆ, ವಿಜ್ಞಾನ, ವಾಣಿಜ್ಯ, ಕಾನೂನು, ಇಂಜಿನಿಯರಿಂಗ್, ಮಾನವಿಕ ವಿಷಯಗಳು, ವೈದ್ಯಕೀಯ, ಔಷಧ ವಿಜ್ಞಾನ, ತತ್ಸಂಬಂಧಿತ ಆರೋಗ್ಯ ವಿಜ್ಞಾನಗಳು, ವ್ಯವಹಾರ ಆಡಳಿತ ನಿರ್ವಹಣೆ, ಕೃಷಿ, ಶಿಕ್ಷಣ ಮತ್ತು ಅಂಥ ಇತರ ವಿಷಯಗಳಲ್ಲಿ ಪದವಿ, ಸ್ನಾತಕೋತ್ತರ, ಡಾಕ್ಟೊರೇಟ್ ಪದವಿಯ (doctoral) ಮತ್ತು ಡಾಕ್ಟೊರೇಟ್ ಪದವಿ ನಂತರದ ವ್ಯಾಸಂಗ ವಿಷಯಗಳ ಕೋರ್ಸುಗಳವರೆಗೆ ಮತ್ತು ಅವುಗಳನ್ನು ಒಳಗೊಂಡಂತೆ ವಿಶ್ವವಿದ್ಯಾಲಯದ ಶಿಕ್ಷಣದ ಸುಧಾರಣೆಯನ್ನು ಬೆಂಬಲಿಸುವುದು, ಉತ್ತೇಜಿಸುವುದು ಮತ್ತು ಕೈಗೆತ್ತಿಕೊಳ್ಳುವುದು;

(iii) ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ವಿಶ್ವವಿದ್ಯಾಲಯದ ಗುಣಮಟ್ಟಗಳಿಗನುಸಾರವಾಗಿ ಶೈಕ್ಷಣಿಕ ಬದಲಾವಣೆ ಮತ್ತು ಸಾಮಾಜಿಕ ಹಾಗೂ ಮಾನವಾಭಿವೃದ್ಧಿ ಬಗ್ಗೆ ಅರಿವನ್ನುಂಟು ಮಾಡಲು ಮತ್ತು ಆ ಬಗ್ಗೆ ಕೊಡುಗೆ ನೀಡಲು ಕರ್ನಾಟಕದಲ್ಲಿನ ವಿವಿಧ ಸ್ಥಳಗಳಲ್ಲಿ ಕ್ಯಾಂಪಸ್ಸುಗಳನ್ನು ಸ್ಥಾಪಿಸುವುದು ಮತ್ತು ಅಧ್ಯಯನ ಕೇಂದ್ರಗಳು, ಸಂಯೋಜಿತ ಕಾಲೇಜುಗಳು ಮತ್ತು ಪ್ರಾದೇಶಿಕ ಕೇಂದ್ರಗಳನ್ನು ಹೊಂದುವುದು;

(iv) ವಾಣಿಜ್ಯೋದ್ಯಮ ಮತ್ತು ವಾಣಿಜ್ಯೋದ್ಯಮಿಗೆ ಸಂಬಂಧಿಸಿದ ಕ್ಷೇತ್ರಗಳಲ್ಲಿ ಸಂಶೋಧನೆ ನಡೆಸಲು ಸುಭದ್ರ ನೆಲೆಗಟ್ಟನ್ನು ರೂಪಿಸುವುದು ಮತ್ತು ಈಗಷ್ಟೆ ರೂಪುತಳೆಯುತ್ತಿರುವ ಕಂಪನಿಗಳಿಗೆ ಕಾರ್ಯತಂತ್ರದ ಸಲಹೆಗಳನ್ನು ಒದಗಿಸುವುದೂ ಒಳಗೊಂಡಂತೆ ಪ್ರಕರಣದ ಅಧ್ಯಯನಗಳನ್ನು ಅಭಿವೃದ್ಧಿಪಡಿಸುವುದು.

(v) ಮೌಲ್ಯಮಾಪನದ ವಿವಿಧ ಆಧುನಿಕ ವಿಧಾನಗಳ ಮೂಲಕ ಮಾಡಿದ ಮೌಲ್ಯಮಾಪನಕ್ಕೆ ಅನುಸಾರವಾಗಿ ಶಿಕ್ಷಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದುದರ ಆಧಾರದ ಮೇಲೆ ನೀಡಲು ಪದವಿಗಳನ್ನು, ಡಿಪ್ಲೋಮೋಗಳನ್ನು, ಪ್ರಮಾಣಪತ್ರಗಳನ್ನು ಮತ್ತು ಯಶೋಪತ್ರ ಪ್ರದಾನದಂಥ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(vi) ವಿದ್ಯಾರ್ಥಿಗಳಿಗೆ, ಬೋಧಕ ವೃಂದದ (ಫ್ಯಾಕಲ್ಟಿ) ಸದಸ್ಯರಿಗೆ ಮತ್ತು ಇತರರಿಗೆ ನಿರ್ದಿಷ್ಟ ಶೈಕ್ಷಣಿಕ ಮತ್ತು ಸಂಶೋಧನಾ ಕಾರ್ಯಕ್ರಮಗಳನ್ನು, ತರಬೇತಿ ಕಾರ್ಯಕ್ರಮಗಳನ್ನು ಮತ್ತು ವಿನಿಮಯ ಕಾರ್ಯಕ್ರಮಗಳನ್ನು ಏರ್ಪಡಿಸುವುದಕ್ಕಾಗಿ ಇತರ ಯಾವುದೇ ವಿಶ್ವವಿದ್ಯಾಲಯಗಳು, ಸಂಶೋಧನಾ ಸಂಸ್ಥೆಗಳು, ಲಾಭರಹಿತ ಸಂಸ್ಥೆಗಳು, ಕೈಗಾರಿಕಾ ಸಂಸ್ಥೆಗಳು, ವೃತ್ತಿಪರ ಸಂಸ್ಥೆಗಳು ಅಥವಾ ಇತರ ಸಂಸ್ಥೆಗಳೊಂದಿಗೆ ಸಹಯೋಗವನ್ನು ಹೊಂದುವುದು;

--

(vii) ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ, ಉತ್ತಮ ಗುಣಮಟ್ಟದ ಇತರ ಯಾವುವೇ ವಿಶ್ವವಿದ್ಯಾಲಯಗಳೊಂದಿಗೆ ಸಹಭಾಗಿಗಳಾಗಿ ವಿಶ್ವವಿದ್ಯಾಲಯದ ಬೋಧಕ ವೃಂದ (ಫ್ಯಾಕಲ್ಟಿ) ಮತ್ತು ಸಂಶೋಧಕರ ಅಭಿವೃದ್ಧಿ ಮತ್ತು ತರಬೇತಿಗಾಗಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು;

(viii) ರಾಜ್ಯ ಸರ್ಕಾರದ ಪೂರ್ವ ಅನುಮೋದನೆಯೊಡನೆ, ಯಾವುದೇ ಸಂಸ್ಥೆಯೊಂದಿಗೆ ಸಹಯೋಗ ಹೊಂದಿ ಸಂಶೋಧನೆಯನ್ನು ನಡೆಸುವುದು ಮತ್ತು ಸಮರ್ಥನಗೊಳಿಸುವುದು;

(ix) ಅನ್ವೇಷಣಾ ಸಮಸ್ಯಾ ಪರಿಹಾರಗಳನ್ನು ಹುಡುಕುವುದನ್ನು ಮತ್ತು ಸೃಜನಾತ್ಮಕತೆಯನ್ನು ಉತ್ತೇಜಿಸುವುದಕ್ಕೆ ಸಂಶೋಧನೆದಲ್ಲಿ ವಿದ್ಯಾರ್ಥಿಗಳನ್ನು ನಿರತರನ್ನಾಗಿಸುವುದು;

(x) ಉನ್ನತ ಕಲಿಕೆಗೆ ಪ್ರವೇಶಾವಕಾಶಗಳನ್ನು ಮತ್ತು ನ್ಯಾಯ ನೀತಿಗೆ ಉತ್ತೇಜನ ನೀಡುವ ದೃಷ್ಟಿಯಿಂದ, ಕಲಿಕೆಯ ವಿಧಾನಗಳು ಮತ್ತು ಸ್ಥಳಗಳು, ವ್ಯಾಸಂಗ ಕ್ರಮಗಳ ಸಂಯೋಜನೆ, ದಾಖಲಾತಿಗಾಗಿ ಅರ್ಹತೆ, ಪ್ರವೇಶದ ವಯಸ್ಸು, ಪರೀಕ್ಷೆಯನ್ನು ನಡೆಸುವುದು ಮತ್ತು ಕಾರ್ಯಕ್ರಮಗಳ ನಿರ್ವಹಣೆಗೆ ಸಂಬಂಧಿಸಿದಂತೆ ನಮ್ಯವಾದ (ಫ್ಲೆಕ್ಸಿಬಲ್) ಮತ್ತು ಮುಕ್ತವಾದ, ವಿಶ್ವವಿದ್ಯಾಲಯ ಮಟ್ಟದ ಶಿಕ್ಷಣದ ಅನ್ವೇಷಣಾ ಪದ್ಧತಿಯನ್ನು ಅಳವಡಿಸುವುದು ಹಾಗೂ ಜ್ಞಾನದ ಹೊಸ ಕ್ಷೇತ್ರಗಳಲ್ಲಿ ಉತ್ಕೃಷ್ಟತೆಗೆ ಪ್ರೋತ್ಸಾಹಿಸುವುದು, ಶೈಕ್ಷಣಿಕ ಮತ್ತು ಸಮನ್ವಯ ಕಲಿಕೆ, ಇವೆರಡಕ್ಕೂ ಸಮನಾದ ಪ್ರಾಮುಖ್ಯತೆಯನ್ನು ನೀಡುವುದು;

(xi) ತನ್ನ ಕಾರ್ಯನೀತಿಗಳು ಮತ್ತು ಕಾರ್ಯಕ್ರಮಗಳ ಮೂಲಕ ರಾಷ್ಟ್ರೀಯ ಸಮಗ್ರತೆ ಮತ್ತು ಮಾನವ ವ್ಯಕ್ತಿತ್ವದ ಸಮಗ್ರ ವಿಕಾಸಕ್ಕೆ ಪ್ರೋತ್ಸಾಹಿಸುವುದು;

(xii) ರೋಗವನ್ನು ಗುಣಪಡಿಸುವುದು, ಪರಿಸರ ಸಂರಕ್ಷಣೆ ಮತ್ತು ಸುಧಾರಣೆ, ಪುನರ್ನವೀಕರಣಗೊಳ್ಳುವ ಇಂಧನ, ಸಮರ್ಥವಾದ ಕೈಗಾರಿಕಾ ಪದ್ಧತಿಗಳು, ವ್ಯವಹಾರ ನಿರ್ವಹಣೆ ಆಡಳಿತ ಮತ್ತು ಸಾಮಾಜಿಕ – ಆರ್ಥಿಕ ಅಭಿವೃದ್ಧಿಯಂಥ ಕ್ಷೇತ್ರಗಳಲ್ಲಿ ಆದರೆ ಅವುಗಳಿಗೆ ಮಾತ್ರ ಸೀಮಿತವಾಗಿರದೆ, ಸಮಸ್ಯೆಗಳನ್ನು ಪರಿಹರಿಸುವುದಕ್ಕೆ ವಿವಿಧ ವಿದ್ಯಾ ವಿಭಾಗಗಳಲ್ಲಿ ವಿವಿಧ ಸಂಶೋಧನಾ ಕಾರ್ಯಕ್ರಮಗಳನ್ನು ಉತ್ತೇಜಿಸುವುದು ಮತ್ತು ಕೈಗೊಳ್ಳುವುದು;

(xiii) ಕೌಶಲಗಳಲ್ಲಿ ತೊಡಗುವುದಕ್ಕಾಗಿ ಕೈಗಾರಿಕೆಗಳಲ್ಲಿ ನಿಯೋಜಿತರಾದ ಜನರ ಶಿಕ್ಷಣದ ಮುಂದುವರಿಕೆಗಾಗಿ ಕಾರ್ಯಕ್ರಮಗಳನ್ನು ರೂಪಿಸುವುದು;

(xiv) ಕೈಗಾರಿಕಾ ಯೋಜನೆಗಳಲ್ಲಿ ವಿದ್ಯಾರ್ಥಿಗಳನ್ನು ಮತ್ತು ಬೋಧಕ ಸಿಬ್ಬಂದಿಯನ್ನು ನಿರತಗೊಳಿಸುವುದು;

(xv) ಸಮಾಲೋಚನ ಕಾರ್ಯಭಾರಗಳ ಮೂಲಕ ಕೈಗಾರಿಕೆಗಳ ಉತ್ಪಾದಕತೆಗೆ ಕೊಡುಗೆಯನ್ನು ನೀಡುವುದು;

(xvi) ಬೋಧನೆ ಮತ್ತು ಸಹಯೋಗದ ಮೂಲಕ ವಿದ್ಯಾರ್ಥಿಗಳಲ್ಲಿ, ಹಳೆ ವಿದ್ಯಾರ್ಥಿಗಳಲ್ಲಿ ಹಾಗೂ ಕೈಗಾರಿಕಾ ಪಾಲುದಾರರಲ್ಲಿ ಉದ್ಯಮಶೀಲತೆಯನ್ನು ಪ್ರೋತ್ಸಾಹಿಸುವುದು;

(xvii) ವಿಚಾರ ಗೋಷ್ಠಿಗಳು, ಕಾರ್ಯಾಗಾರಗಳು, ಉಪನ್ಯಾಸ ಮಾಲಿಕೆಗಳು, ಚರ್ಚೆಗಳು, ಸಮ್ಮೇಳನಗಳು, ನಿರಂತರ ಶಿಕ್ಷಣ ಕಾರ್ಯಕ್ರಮಗಳು, ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳು, ಪ್ರಕಟಣೆಗಳು, ತರಬೇತಿ ಕಾರ್ಯಕ್ರಮಗಳು ಹಾಗೂ ಉದ್ಯಮಶೀಲತೆಯ ಮೂಲಕ ರಾಷ್ಟ್ರೀಯ ಮತ್ತು ಅಂತರ ರಾಷ್ಟ್ರೀಯ ಪ್ರಾಮುಖ್ಯ ವಿಷಯಗಳ ಬಗ್ಗೆ ಸಾರ್ವಜನಿಕರು ಮತ್ತು ಖಾಸಗಿ ಆಹ್ವಾನಿತರಲ್ಲಿ ತಿಳುವಳಿಕೆ ಮತ್ತು ಸ್ಫೂರ್ತಿಯನ್ನು ವೃದ್ಧಿಗೊಳಿಸುವುದು;

(xviii) ಉದಾಹರಣೆಯ ಮೂಲಕ ಬೋಧನೆ, ಕಲಿಕೆ ಮತ್ತು ಮುನ್ನಡೆಯ ಮೂಲಕ ಸಾಮಾಜಿಕ ಉದ್ಯಮಶೀಲತಾ ಕಾರ್ಯಕ್ರಮಗಳನ್ನು ಅಭಿವೃದ್ಧಿಗೊಳಿಸುವುದು;

(xix) ಸಮಾಜದ ಗ್ರಾಮೀಣ ಮತ್ತು ನಗರ ವರ್ಗಗಳ ಅಭಿವೃದ್ಧಿಗೆ ಸಂಬಂಧಿಸಿದ ಅಭಿವೃದ್ಧಿ ಚಟುವಟಿಕೆಗಳನ್ನು ಕೈಗೊಳ್ಳುವುದು;

(xx) ಜಾಗತಿಕ ಜ್ಞಾನವನ್ನು ಒಟ್ಟುಗೂಡಿಸುವ ಮೂಲಕ ಗಂಭೀರ ಸಮಸ್ಯೆಗಳನ್ನು ಪರಿಹರಿಸಲು ಅಭಿವೃದ್ಧಿಶೀಲ, ಅನಭಿವೃದ್ಧಿ ಮತ್ತು ಅಭಿವೃದ್ಧಿ ಹೊಂದಿದ ರಾಷ್ಟ್ರಗಳೊಂದಿಗೆ ಸಹಯೋಗ.

(i) ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಮನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(ii) ವಿಶ್ವವಿದ್ಯಾಲಯದ ಪ್ರಥಮ ಪ್ರಬಂಧಕ ಮಂಡಳಿಯನ್ನು ರಚಿಸುವುದು;

(iii) ಪ್ರಬಂಧಕ ಮಂಡಳಿಯ ಅಧ್ಯಕ್ಷರನ್ನು ನಾಮನಿರ್ದೇಶಿಸುವುದು;

(iv) ಪ್ರಬಂಧಕ ಮಂಡಳಿಯ ಸದಸ್ಯರಾಗಿ ಮೂರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(v) ವ್ಯವಸ್ಥಾಪನಾ ಮಂಡಳಿಯ ಸದಸ್ಯರಾಗಿ ಇಬ್ಬರು ವ್ಯಕ್ತಿಗಳನ್ನು ನಾಮ ನಿರ್ದೇಶಿಸುವುದು;

(vi) ವಿಶ್ವವಿದ್ಯಾಲಯದ ದತ್ತಿ ನಿಧಿಗೆ ದೇಣಿಗೆ ನೀಡಲು ನಿಧಿ ಮೂಲಗಳನ್ನು ನಿರ್ಧರಿಸುವುದು;

(vii) ವಿಶ್ವವಿದ್ಯಾಲಯದ ಹಣದ ವಿನಿಯೋಗ ಮತ್ತು ವೆಚ್ಚ ಮಾಡುವುದನ್ನು ನಿರ್ಧರಿಸುವುದು;

(viii) ಈ ಅಧಿನಿಯಮದಲ್ಲಿ ಉಪಬಂಧಿಸಿರುವ ವಿಧಾನದಲ್ಲಿ ಪ್ರಬಂಧಕ ಮಂಡಳಿಯ ಸಭೆಯಲ್ಲಿಯ ವಿವಾದಗಳನ್ನು ಬಗೆಹರಿಸುವುದು;

## ಅಧ್ಯಾಯ – III

## ವಿಶ್ವವಿದ್ಯಾಲಯದ ಅಧಿಕಾರಿಗಳು

**12. ವಿಶ್ವವಿದ್ಯಾಲಯದ ಅಧಿಕಾರಿಗಳು.–** ಈ ಮುಂದಿನವರು ವಿಶ್ವವಿದ್ಯಾಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:–

(i) ಸಂದರ್ಶಕರು;

(ii) ಸಹ–ಸಂದರ್ಶಕರು;

(iii) ಕುಲಾಧಿಪತಿಗಳು;

(iv) ಕುಲಪತಿಗಳು;

(v) ಸಹಕುಲಪತಿಗಳು;

(vi) ಕುಲಸಚಿವರು;

(vii) ಹಣಕಾಸು ಅಧಿಕಾರಿ; ಮತ್ತು

(viii) ಪರಿನಿಯಮಗಳ ಮೂಲಕ ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಘೋಷಿಸಬಹುದಾದಂಥ ಇತರ ಅಧಿಕಾರಿಗಳು.

**13. ಸಂದರ್ಶಕರು.–** (1) ಕರ್ನಾಟಕದ ಘನತೆವೆತ್ತ ರಾಜ್ಯಪಾಲರು ವಿಶ್ವವಿದ್ಯಾಲಯದ ಸಂದರ್ಶಕರಾಗಿರತಕ್ಕದ್ದು ಮತ್ತು ಸಂದರ್ಶಕರು ವಿಶ್ವವಿದ್ಯಾಲಯದ ಕಾರ್ಯನಿರ್ವಹಣೆಯ ಸುಧಾರಣೆಗಾಗಿ ಸಲಹೆಗಳನ್ನು ನೀಡಬಹುದು.

(2) ಸಂದರ್ಶಕರು, ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಸಂದರ್ಶಕರು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ವ್ಯವಹಾರಗಳಿಗೆ ಸಂಬಂಧಿಸಿದಂತೆ, ಯಾವುದೇ ಪತ್ರ ಅಥವಾ ಮಾಹಿತಿಯನ್ನು ತರಿಸಿಕೊಳ್ಳುವುದು.

(ii) ಸಂದರ್ಶಕರು, ಅವರು ಸ್ವೀಕರಿಸಿದ ಮಾಹಿತಿಯ ಆಧಾರದ ಮೇಲೆ ವಿಶ್ವವಿದ್ಯಾಲಯಗಳ ಯಾವುದೇ ಪ್ರಾಧಿಕಾರವು ಮಾಡಿದ ಯಾವುದೇ ಆದೇಶ, ನಡೆಸಿದ ವ್ಯವಹರಣೆಗಳು ಅಥವಾ ಕೈಗೊಂಡ ತೀರ್ಮಾನಗಳು, ಈ ಅಧಿನಿಯಮ, ವಿನಿಯಮಗಳು ಅಥವಾ ನಿಯಮಗಳಿಗೆ ಪೂರಕವಾಗಿಲ್ಲವೆಂದು

ಮನಗಂಡರೆ ಅವರು ವಿಶ್ವವಿದ್ಯಾಲಯದ ಹಿತಾಸಕ್ತಿಯಿಂದ ತಾವು ಸೂಕ್ತವೆಂದು ಭಾವಿಸಬಹುದಾದಂಥ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಹಾಗೆ ಹೊರಡಿಸಿದ ನಿರ್ದೇಶನಗಳನ್ನು ಸಂಬಂಧಪಟ್ಟವರೆಲ್ಲರೂ ಪಾಲಿಸತಕ್ಕದ್ದು.

**14. ಸಹ-ಸಂದರ್ಶಕರು.**- (1) ಕರ್ನಾಟಕ ಸರ್ಕಾರದ ಮಾನ್ಯ ಉನ್ನತ ಶಿಕ್ಷಣ ಸಚಿವರು ವಿಶ್ವವಿದ್ಯಾಲಯದ ಸಹ-ಸಂದರ್ಶಕರಾಗಿರತಕ್ಕದ್ದು.

(2) ಸಂದರ್ಶಕರ ಅನುಪಸ್ಥಿತಿಯಲ್ಲಿ ಸಹ-ಸಂದರ್ಶಕರು ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**15. ಕುಲಾಧಿಪತಿಗಳು.**- (1) ಕುಲಾಧಿಪತಿಯವರನ್ನು ಪ್ರಾಯೋಜಕ ಸಂಸ್ಥೆಯು ನೇಮಿಸತಕ್ಕದ್ದು.

(2) ಪ್ರಾಯೋಜಕ ಸಂಸ್ಥೆಯ ಸಂಸ್ಥಾಪಿತ ನ್ಯಾಸಧಾರಿಯು ಮೊದಲನೇ ಕುಲಾಧಿಪತಿಗಳಾಗಿರತಕ್ಕದ್ದು, ಅವರು ತಮ್ಮ ಜೀವನಪರ್ಯಂತ ಅಥವಾ ಅವರು ತಮ್ಮ ಪದವನ್ನು ಬಿಟ್ಟುಕೊಡುವವರೆಗೆ ಕುಲಾಧಿಪತಿಗಳಾಗಿ ಪದಧಾರಣ ಮಾಡಿರತಕ್ಕದ್ದು.

(3) ತದನಂತರದ ಕುಲಾಧಿಪತಿಗಳು, ಅಂಥ ನೇಮಕಾತಿಯನ್ನು ಪರಿಗಣಿಸುವ ಸಂದರ್ಭದಲ್ಲಿ ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ, ಪ್ರಾಯೋಜಕ ಸಂಸ್ಥೆಯ ನ್ಯಾಸಧಾರಿಯಾಗಿರತಕ್ಕದ್ದು ಅಥವಾ ಶಿಕ್ಷಣ, ವಿಜ್ಞಾನ, ಸಂಸ್ಕೃತಿ ಅಥವಾ ಸಾರ್ವಜನಿಕ ಜೀವನ ಕ್ಷೇತ್ರಗಳಲ್ಲಿ ರಾಷ್ಟ್ರೀಯ ಮಟ್ಟದ ಛಾಪನ್ನು ಪಡೆದಿರುವ ಅಂಥ ಇತರ ವ್ಯಕ್ತಿಯಾಗಿರತಕ್ಕದ್ದು.

(4) ಹಾಗೆ ನೇಮಕಗೊಂಡ ತದನಂತರದ ಕುಲಾಧಿಪತಿಗಳು ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ಪದಧಾರಣ ಮಾಡತಕ್ಕದ್ದು.

(5) ಕುಲಾಧಿಪತಿಗಳು ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳ ಅಡಿಯಲ್ಲಿ ಅವರಿಗೆ ಪ್ರದಾನ ಮಾಡಬಹುದಾದಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು, ಅವುಗಳಲ್ಲಿ ಈ ಮುಂದಿನ ಅಧಿಕಾರಗಳು ಒಳಗೊಂಡಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುವುದು;

(ii) ಸಂದರ್ಶಕರ ಮತ್ತು ಸಹ-ಸಂದರ್ಶಕರಿಬ್ಬರ ಗೈರುಹಾಜರಿಯಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಘಟಿಕೋತ್ಸವಗಳಲ್ಲಿ ಅಧ್ಯಕ್ಷತೆಯನ್ನು ವಹಿಸುವುದು;

(iii) ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವುದು;

(iv) ಈ ಅಧಿನಿಯಮ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಅನುಸಾರವಾಗಿ ಕುಲಪತಿಗಳನ್ನು ನೇಮಿಸುವುದು ಅಥವಾ ಮರುನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(v) ಈ ಅಧಿನಿಯಮದ 16ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ನಾಮನಿರ್ದೇಶಕ ಸಮಿತಿಯ ಸದಸ್ಯರಾಗಿ ಒಬ್ಬ ವ್ಯಕ್ತಿಯನ್ನು ನಾಮನಿರ್ದೇಶನ ಮಾಡುವುದು;

(vi) ಸಹಕುಲಪತಿಗಳು, ಡೀನ್, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿಗಳ ನೇಮಕಾತಿಯನ್ನು ಪೂರ್ವಾನುಮೋದಿಸುವುದು;

(vii) ಪ್ರಬಂಧಕ ಮಂಡಳಿಯ ಸದಸ್ಯರನ್ನಾಗಿ ಇಬ್ಬರು ಶಿಕ್ಷಣ ತಜ್ಞರನ್ನು ನಾಮನಿರ್ದೇಶಿಸುವುದು;

(viii) ಮೊದಲ ಸಹಕುಲಪತಿಗಳು ಮತ್ತು ಹಣಕಾಸು ಅಧಿಕಾರಿಗಳನ್ನು ನೇಮಿಸುವುದು;

(ix) ಮೊದಲ ವ್ಯವಸ್ಥಾಪನಾ ಮಂಡಳಿ, ಹಣಕಾಸು ಸಮಿತಿ, ಸಂಶೋಧನಾ ಪರಿಷತ್ತು ಹಾಗೂ ಶೈಕ್ಷಣಿಕ ಪರಿಷತ್ತುಗಳನ್ನು ರಚಿಸುವುದು;

(x) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ ಕಾರ್ಯಸೂಚಿ ವಿಷಯಗಳನ್ನು ಪೂರ್ವಾನುಮೋದಿಸುವುದು;

(xi) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ (ಪ್ರಬಂಧಕ ಮಂಡಳಿಯ ಸಭೆಯಲ್ಲಿ ಉಂಟಾದ ವಿವಾದಗಳನ್ನು ಹೊರತುಪಡಿಸಿ) ವಿವಾದಗಳನ್ನು ಪರಿಹರಿಸುವುದು.

(6) ಪದಾಧಿಕಾರಿ ಅಥವಾ ಸಂಸ್ಥೆ ಮತ್ತು ವಿಶ್ವವಿದ್ಯಾಲಯದ ಯಾವುದೇ ಇತರ ಪದಾಧಿಕಾರಿ ಅಥವಾ ಸಂಸ್ಥೆಯ ನಡುವೆ ವಿವಾದಗಳು ಉಂಟಾದಲ್ಲಿ, ಆ ವಿವಾದವನ್ನು ಕುಲಾಧಿಪತಿಯವರ ಪರ್ಯಾಲೋಚನೆಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿವಾದದ ಸಂದರ್ಭದಲ್ಲಿ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**16. ಕುಲಪತಿಗಳು.–** (1) (2)ನೇ ಉಪಪ್ರಕರಣದ ಉಪಬಂಧಗಳಿಗೆ ಅನುಸಾರವಾಗಿ ನಾಮನಿರ್ದೇಶಕ ಸಮಿತಿಯು ಶಿಫಾರಸ್ಸು ಮಾಡಿದ ಮೂರು ವ್ಯಕ್ತಿಗಳ ಪೈಕಿಯಿಂದ ಒಬ್ಬರನ್ನು ಮೂರು ವರ್ಷಗಳ ಅವಧಿಗಾಗಿ ಕುಲಪತಿಗಳನ್ನಾಗಿ, ಪರಿನಿಯಮಗಳಲ್ಲಿ ನಿಯಮಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರು ನೇಮಿಸತಕ್ಕದ್ದು. ಮೂರು ವರ್ಷಗಳ ಅವಧಿಯು ಮುಗಿದ ತರುವಾಯ, ಇದನ್ನು ಮೂರು ವರ್ಷಗಳ ಮತ್ತೊಂದು ಅವಧಿಗೆ ನವೀಕರಿಸಬಹುದು:

ಪರಂತು, ಕುಲಪತಿಯವರು, ತಮ್ಮ ಅವಧಿ ಮುಗಿದ ನಂತರವೂ ಹೊಸ ಕುಲಪತಿಯವರು ಸೇರಿಕೊಳ್ಳುವವರೆಗೆ ಪದದಲ್ಲಿ ಮುಂದುವರೆಯತಕ್ಕದ್ದು. ಆದಾಗ್ಯೂ ಈ ಅವಧಿಯು ಯಾವುದೇ ಸಂದರ್ಭದಲ್ಲಿ ಒಂದು ವರ್ಷವನ್ನು ಮೀರತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಹೇಳಿರುವ ನಾಮನಿರ್ದೇಶಕ ಸಮಿತಿಯಲ್ಲಿ ಈ ಮುಂದಿನ ವ್ಯಕ್ತಿಗಳು ಇರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು ನಾಮನಿರ್ದೇಶಿಸಿದ ಒಬ್ಬ ವ್ಯಕ್ತಿ;

(ii) ಪ್ರಬಂಧಕ ಮಂಡಳಿಯ ಇಬ್ಬರು ನಾಮ ನಿರ್ದೇಶಿತರು, ಇವರಲ್ಲಿ ಒಬ್ಬರನ್ನು ಪ್ರಬಂಧಕ ಮಂಡಳಿಯು ಸಮಿತಿಯ ಸಂಚಾಲಕರೆಂದು ನಾಮನಿರ್ದೇಶಿಸತಕ್ಕದ್ದು.

(3) ನಾಮನಿರ್ದೇಶಕ ಸಮಿತಿಯು, ಅರ್ಹತೆಯ ಆಧಾರದ ಮೇಲೆ ಕುಲಪತಿಯ ಹುದ್ದೆಗೆ ಸೂಕ್ತವಾದ ಮೂರು ವ್ಯಕ್ತಿಗಳ ಹೆಸರನ್ನು ಶಿಫಾರಸ್ಸು ಮಾಡತಕ್ಕದ್ದು ಮತ್ತು ಅದನ್ನು ಪ್ರತಿಯೊಬ್ಬ ವ್ಯಕ್ತಿಯ ವಿದ್ಯಾರ್ಹತೆ ಮತ್ತಿತರ ವಿಶಿಷ್ಟ ಪ್ರಶಸ್ತಿಗಳನ್ನು ತಿಳಿಸುವ ಒಂದು ಸಂಕ್ಷಿಪ್ತ ವರದಿಯೊಂದಿಗೆ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು.

(4) ಕುಲಪತಿಯವರು ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಾಹಕ ಮತ್ತು ಶೈಕ್ಷಣಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣವನ್ನು ಚಲಾಯಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯದ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೊಳಿಸತಕ್ಕದ್ದು:

ಪರಂತು, ಶಿಕ್ಷಕರ ನೇಮಕಾತಿಯನ್ನು ಹೊರತುಪಡಿಸಿ ಕೂಡಲೇ ಕ್ರಮವನ್ನು ಕೈಗೊಳ್ಳಬೇಕಾದ ತುರ್ತು ಸ್ವರೂಪದ ಯಾವುದೇ ಇತರ ವಿಷಯಗಳಲ್ಲಿ ಮತ್ತು ಅದನ್ನು ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ವಿಶ್ವವಿದ್ಯಾಲಯವು ಇದಕ್ಕಾಗಿ ಅಧಿಕೃತಗೊಳಿಸಿದ್ದ ಯಾವೊಬ್ಬ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ಇತರ ಸಂಸ್ಥೆಯು ಕೂಡಲೇ ಕ್ರಮಕೈಗೊಳ್ಳುವುದು ಸಾಧ್ಯವಿರದಿರುವಾಗ ಕುಲಪತಿಯವರು ತಾನು ಸೂಕ್ತವೆಂದು ಭಾವಿಸಬಹುದಾದಂತಹ ಕ್ರಮವನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆದು ಕೈಗೊಳ್ಳತಕ್ಕದ್ದು.

(5) ಕುಲಪತಿಯವರು ಪರಿನಿಯಮಗಳು ಅಥವಾ ನಿಯಮಗಳಲ್ಲಿ ಹೇಳಲಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು:

ಪರಂತು, ಕುಲಪತಿಗಳ ಅಭಿಪ್ರಾಯದಲ್ಲಿ, ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಯಾವುದೇ ನಿರ್ಣಯವು, ಈ ಅಧಿನಿಯಮ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳು, ವಿನಿಯಮಗಳು ಅಥವಾ ನಿಯಮಗಳ ಮೂಲಕ ಪ್ರದತ್ತವಾದ ಅಧಿಕಾರದ ಹೊರಗಿದ್ದರೆ ಅಥವಾ ವಿಶ್ವವಿದ್ಯಾಲಯದ ಹಿತಾಸಕ್ತಿಗೆ ಪ್ರತಿಕೂಲವಾಗಬಹುದಾಗಿದ್ದರೆ, ಅದರ ನಿರ್ಣಯದ ದಿನಾಂಕದಿಂದ ಹದಿನೈದು ದಿನಗಳ ಒಳಗೆ ತನ್ನ ನಿರ್ಣಯವನ್ನು ಪರಿಷ್ಕರಿಸಲು ಸಂಬಂಧಪಟ್ಟ ಪ್ರಾಧಿಕಾರವನ್ನು ಆತನು ಕೋರತಕ್ಕದ್ದು ಮತ್ತು ಪ್ರಾಧಿಕಾರವು ಅಂಥ ನಿರ್ಣಯವನ್ನು ಸಂಪೂರ್ಣವಾಗಿ ಅಥವಾ ಭಾಗಶಃವಾಗಿ ಪರಿಷ್ಕರಿಸಲು ನಿರಾಕರಿಸಿದ ಸಂದರ್ಭದಲ್ಲಿ ಅಥವಾ ಹದಿನೈದು ದಿನಗಳೊಳಗೆ ಯಾವುದೇ ನಿರ್ಣಯವನ್ನು ತೆಗೆದುಕೊಳ್ಳಲು ವಿಫಲವಾದಲ್ಲಿ, ನಂತರ ಅಂಥ ವಿಷಯವನ್ನು ಕುಲಾಧಿಪತಿಗಳಿಗೆ ಕಳುಹಿಸತಕ್ಕದ್ದು ಮತ್ತು ಈ ಬಗ್ಗೆ ಇವರ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

--

(6) ಕುಲಪತಿಯವರ ಸೇವೆಗಳನ್ನು, ಪ್ರಬಂಧಕ ಮಂಡಳಿಯ ಅನುಮೋದನೆಯೊಂದಿಗೆ ಮತ್ತು ಸಹಜ ನ್ಯಾಯದ ತತ್ವಗಳನ್ನು ಅನುಸರಿಸಿದ ನಂತರ ಹಾಗೂ ಶಿಸ್ತಿನ ಆಧಾರದ ಮೇಲೆ ಅಂತ್ಯಗೊಳಿಸುವ ಸಂದರ್ಭವೂ ಸೇರಿದಂತೆ, ಪ್ರಕರಣದ ಬಗ್ಗೆ ಕುಲಪತಿಯು ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡಿದ ತರುವಾಯ, ಕುಲಾಧಿಪತಿಯವರು ಅಂತ್ಯಗೊಳಿಸಬಹುದು.

(7) ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಸಂದರ್ಶಕರು, ಸಹ-ಸಂದರ್ಶಕರು ಮತ್ತು ಕುಲಾಧಿಪತಿಯವರು ಇವರುಗಳ ಗೈರು ಹಾಜರಿಯ ಸಂದರ್ಭದಲ್ಲಿ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**17. ಸಹಕುಲಪತಿಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಮೂರು ಜನರನ್ನು ಮೀರದಂತೆ ಸಹಕುಲಪತಿಗಳನ್ನು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**18. ವ್ಯಾಸಂಗ ವಿಭಾಗಗಳ ಡೀನ್‌ಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಪರಿನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವ್ಯಾಸಂಗ ವಿಭಾಗಗಳ ಡೀನ್‌ಗಳನ್ನು ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**19. ಕುಲಸಚಿವರು.–** (1) ಕುಲಾಧಿಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಸಚಿವರನ್ನು ನೇಮಕ ಮಾಡತಕ್ಕದ್ದು.

(2) ಪರಿನಿಯಮಗಳಲ್ಲಿ ಪರಿಭಾಷಿಸಿರುವಂಥ ಎಲ್ಲಾ ಕರಾರುಗಳನ್ನು ವಿಶ್ವವಿದ್ಯಾಲಯದ ಪರವಾಗಿ ಕುಲಸಚಿವರು ಮಾಡಿಕೊಳ್ಳತಕ್ಕದ್ದು ಮತ್ತು ಅದಕ್ಕೆ ಸಹಿ ಹಾಕತಕ್ಕದ್ದು.

(3) ಕುಲಸಚಿವರು ವಿಶ್ವವಿದ್ಯಾಲಯದ ಪರವಾಗಿ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಪರಿನಿಯಮಗಳಿಂದ ಪ್ರದತ್ತಗೊಳಿಸಬಹುದಾದಂಥ ಅಥವಾ ಕುಲಾಧಿಪತಿಯವರು ಮತ್ತು ಕುಲಪತಿಯವರು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು ವಿಶ್ವವಿದ್ಯಾಲಯದ ದಾಖಲೆಗಳು ಮತ್ತು ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು, ಕುಲಪತಿಯವರು ಅಥವಾ ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಅಂಥ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿತಕ್ಕದ್ದು.

**20. ಹಣಕಾಸು ಅಧಿಕಾರಿ.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು, ಪರಿನಿಯಮಗಳ ಮೂಲಕ ಪ್ರದತ್ತಗೊಳಿಸಬಹುದಾದ ಅಂಥ ವಿಧಾನದಲ್ಲಿ ಹಣಕಾಸು ಅಧಿಕಾರಿಯನ್ನು ನೇಮಕ ಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**21. ಇತರ ಅಧಿಕಾರಿಗಳು.–** ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ ನೇಮಕಾತಿಯ ವಿಧಾನ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಕರ್ತವ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ – IV

## ವಿಶ್ವವಿದ್ಯಾಲಯದ ಪ್ರಾಧಿಕಾರಗಳು

**22. ವಿಶ್ವವಿದ್ಯಾಲಯದ ಪ್ರಾಧಿಕಾರಗಳು.–** ಈ ಮುಂದಿನವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:–

(i) ಪ್ರಬಂಧಕ ಮಂಡಳಿ;

(ii) ವ್ಯವಸ್ಥಾಪನ ಮಂಡಳಿ;

(iii) ಶೈಕ್ಷಣಿಕ ಪರಿಷತ್ತು;

(iv) ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು;

(v) ಹಣಕಾಸು ಸಮಿತಿ; ಮತ್ತು

(vi) ವಿಶ್ವವಿದ್ಯಾಲಯದ ಪ್ರಾಧಿಕಾರಗಳೆಂದು ಪರಿನಿಯಮಗಳ ಮೂಲಕ ಘೋಷಿಸಬಹುದಾದ ಅಂಥ ಇತರ ಪ್ರಾಧಿಕಾರಗಳು.

**23. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು.–** (1) ಪ್ರಬಂಧಕ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು – ಅಧ್ಯಕ್ಷರು;

(ii) ಕುಲಪತಿಯವರು – ಸದಸ್ಯರು;

(iii) ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(iv) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(v) ರಾಜ್ಯ ಸರ್ಕಾರವು ನಾಮ ನಿರ್ದೇಶನ ಮಾಡಿದ ಆಡಳಿತವನ್ನು ಒಳಗೊಂಡಂತೆ ವ್ಯವಸ್ಥಾಪನೆ, ಹಣಕಾಸು ಅಥವಾ ಯಾವುದೇ ಇತರ ವಿಶೇಷ ಕ್ಷೇತ್ರದಲ್ಲಿನ ಒಬ್ಬರು ತಜ್ಞರು;

(vi) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಇಬ್ಬರು ವ್ಯಕ್ತಿಗಳು ಅವರ ಪೈಕಿ ಒಬ್ಬರು ಮಹಿಳೆಯಾಗಿರತಕ್ಕದ್ದು;

(vii) ಸಹ ಕುಲಪತಿಯವರು ಮತದಾನದ ಹಕ್ಕಿಲ್ಲದ ಸದಸ್ಯರಾಗಿರತಕ್ಕದ್ದು;

(viii) ವಿಶ್ವವಿದ್ಯಾಲಯ ಅನುದಾನ ಆಯೋಗದ ನಾಮನಿರ್ದೇಶಿತ ಒಬ್ಬ ಸುಪ್ರಸಿದ್ಧ ಶಿಕ್ಷಣ ತಜ್ಞರು.

(2) ಕುಲಸಚಿವರು ಪ್ರಬಂಧಕ ಮಂಡಳಿಯ ಮತ ದಾನದ ಹಕ್ಕಿರದ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ಪ್ರಬಂಧಕ ಮಂಡಳಿಯ ಸದಸ್ಯರ ಪದಾವಧಿ, ಸರ್ಕಾರದಿಂದ ನಾಮನಿರ್ದೇಶಿತರಾದ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ನೇಮಕಾತಿ, ನವೀಕರಣ ಮತ್ತು ತೆಗೆದುಹಾಕುವುದು ಮುಂತಾದವುಗಳು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಾಧಿಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರ ಗೈರುಹಾಜರಿಯಲ್ಲಿ ಕುಲಾಧಿಪತಿಯವರಿಂದ ನಾಮನಿರ್ದೇಶಿತರಾದ ಯಾರಾದರೂ ಒಬ್ಬರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು. ಅಂಥ ಸಭೆಯ ಅಧ್ಯಕ್ಷತೆಯನ್ನು ವಹಿಸುವುದಕ್ಕೆ ಕುಲಾಧಿಪತಿಯವರು ಯಾವೊಬ್ಬ ವ್ಯಕ್ತಿಯನ್ನೂ ನಾಮನಿರ್ದೇಶನ ಮಾಡಿರದಿದ್ದಲ್ಲಿ, ಸಭೆಯಲ್ಲಿ ಹಾಜರಿರುವ ಸದಸ್ಯರು ಸರಳ ಬಹುಮತದ ಮೂಲಕ ಅವರುಗಳ ಪೈಕಿಯಿಂದಲೇ ಆ ಸಭೆಗೆ ಮಾತ್ರವೇ ಅಧ್ಯಕ್ಷನನ್ನು ಚುನಾಯಿಸತಕ್ಕದ್ದು.

(5) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಿಗೆ, ಅಂಥ ಸಭೆಯಲ್ಲಿ ಹಾಜರಾಗುವ ಮತ್ತು ಮತದಾನ ನೀಡುವ ಮೂರು ಜನ ಸದಸ್ಯರು ಗಣಪೂರ್ತಿ (ಕೋರಂ) ಆಗಿರತಕ್ಕದ್ದು:

ಪರಂತು, ಪ್ರಬಂಧಕ ಮಂಡಳಿಯ ಯಾವುದೇ ಸಭೆಯ ಕೋರಂ ಪೂರ್ಣವಾಗಬೇಕಾದರೆ ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಿರುವುದು ಮತ್ತು ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ನಾಮನಿರ್ದೇಶಿತರು ಹಾಜರಾಗದೇ ಇದ್ದಾಗ ಕುಲಪತಿಯವರು ಹಾಜರಿರುವುದು ಯಾವಾಗಲೂ ಅವಶ್ಯವಾಗಿರತಕ್ಕದ್ದು.

(6) ಪ್ರಬಂಧಕ ಮಂಡಳಿಯು ವಿಶ್ವವಿದ್ಯಾಲಯದ ಪ್ರಧಾನ ಪ್ರಬಂಧಕ ಸಂಸ್ಥೆಯಾಗಿರತಕ್ಕದ್ದು ಮತ್ತು ಅದು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

--

(i) ವಿಶ್ವವಿದ್ಯಾಲಯದ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಕಗೊಳಿಸುವುದು;

(ii) ವಿಶ್ವವಿದ್ಯಾಲಯವು ಅನುಸರಿಸಬೇಕಾದ ಕಾರ್ಯನೀತಿಗಳನ್ನು ರಚಿಸುವುದು;

(iii) ಈ ಅಧಿನಿಯಮದ ಅಥವಾ ಪರಿನಿಯಮಗಳ ಅಥವಾ ನಿಯಮಗಳ ಉಪಬಂಧಗಳಿಗೆ ಅನುಗುಣವಾಗಿ ಇರದ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ತೀರ್ಮಾನಗಳನ್ನು ಪುನರೀಕ್ಷಿಸುವುದು;

(iv) ವಿಶ್ವವಿದ್ಯಾಲಯದ ಆಯವ್ಯಯ ಮತ್ತು ವಾರ್ಷಿಕ ವರದಿಗಳನ್ನು ಅನುಮೋದಿಸುವುದು;

(v) ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸುವುದು ಅಥವಾ ಈಗಾಗಲೇ ಇರುವ ಪರಿನಿಯಮಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವುದು ಅಥವಾ ನಿರಸನಗೊಳಿಸುವುದು;

(vi) ವಿಶ್ವವಿದ್ಯಾಲಯವನ್ನು ಸ್ವಯಂಸಮಾಪನಗೊಳಿಸುವ ನಿರ್ಧಾರವನ್ನು ತೆಗೆದುಕೊಳ್ಳುವುದು;

(vii) ಸರ್ಕಾರಕ್ಕೆ ಸಲ್ಲಿಸುವ ಪ್ರಸ್ತಾವಗಳನ್ನು ಅನುಮೋದಿಸುವುದು;

(viii) ಶುಲ್ಕ ನಿಯಂತ್ರಣ ಸಮಿತಿಗೆ ಮೂವರು ಸದಸ್ಯರನ್ನು ನಾಮನಿರ್ದೇಶನ ಮಾಡುವುದು;

(ix) ವಿಶ್ವವಿದ್ಯಾಲಯದ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕೆ ಅಪೇಕ್ಷಣೀಯವೆಂದು ಕಂಡುಬರುವಂಥ ತೀರ್ಮಾನಗಳನ್ನು ಮತ್ತು ಕ್ರಮಗಳನ್ನು ಕೈಗೊಳ್ಳುವುದು.

(7) ಪ್ರಬಂಧಕ ಮಂಡಳಿಯು ಒಂದು ವರ್ಷದಲ್ಲಿ ಕನಿಷ್ಠ ಮೂರು ಸಲ ಸಭೆ ಸೇರತಕ್ಕದ್ದು.

(8) ಪ್ರಬಂಧಕ ಮಂಡಳಿಯು ಶಾಸನದ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ಅವಧಿಯಲ್ಲಿ ಮತ್ತು ಸ್ಥಳದಲ್ಲಿ ಸಭೆ ಸೇರತಕ್ಕದ್ದು.

**24. ವ್ಯವಸ್ಥಾಪನಾ ಮಂಡಳಿ.–** (1) ವ್ಯವಸ್ಥಾಪನಾ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಗಳು;

(ii) ಸಹಕುಲಪತಿಗಳು;

(iii) ಕುಲಸಚಿವರು;

(iv) ಪ್ರಾಯೋಜಕ ಸಂಸ್ಥೆಯ ಇಬ್ಬರು ನಾಮನಿರ್ದೇಶಿತರು;

(v) ಕುಲಪತಿಗಳು ನಾಮನಿರ್ದೇಶಿಸಬಹುದಾದ ವಿದ್ಯಾಲಯಗಳ ಇಬ್ಬರು ಡೀನ್‌ಗಳು;

(2) ಕುಲಪತಿಯವರು ವ್ಯವಸ್ಥಾಪನಾ ಮಂಡಳಿಯ ಅಧ್ಯಕ್ಷರಾಗಿರತಕ್ಕದ್ದು ಮತ್ತು ಕುಲಸಚಿವರು ವ್ಯವಸ್ಥಾಪನಾ ಮಂಡಳಿಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ವ್ಯವಸ್ಥಾಪನಾ ಮಂಡಳಿಯು ವಿಶ್ವವಿದ್ಯಾಲಯದ ಕಾರ್ಯನಿರ್ವಾಹಕ ಸಂಸ್ಥೆಯಾಗಿರತಕ್ಕದ್ದು. ವ್ಯವಸ್ಥಾಪನಾ ಮಂಡಳಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ವ್ಯವಸ್ಥಾಪನಾ ಮಂಡಳಿಯ ಎಲ್ಲಾ ಸಭೆಗಳಲ್ಲಿ ಯಾವಾಗಲೂ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು ಹಾಗೂ ಕುಲಪತಿಯವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೇ ಇದ್ದ ಸಂದರ್ಭದಲ್ಲಿ ಸಭೆಯಲ್ಲಿ ಹಾಜರಿರುವ ಸದಸ್ಯರು ಚುನಾಯಿಸಿದ ಯಾವುದೇ ಇತರೆ ಸದಸ್ಯರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ವ್ಯವಸ್ಥಾಪನಾ ಮಂಡಳಿಯ ಸಭೆಯಲ್ಲಿ ಯಾವುದೇ ವಿಷಯವನ್ನು ಕುರಿತು ವಿವಾದ ಉಂಟಾದಲ್ಲಿ ಸದರಿ ವಿಷಯವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯದ ಬಗ್ಗೆ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**25. ಶೈಕ್ಷಣಿಕ ಪರಿಷತ್ತು.–**(1) ಶೈಕ್ಷಣಿಕ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಕಾರ್ಯದರ್ಶಿಗಳು

(iv) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಶೈಕ್ಷಣಿಕ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಶೈಕ್ಷಣಿಕ ಸಂಸ್ಥೆಯಾಗಿರತಕ್ಕದ್ದು ಮತ್ತು ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಹಾಗೂ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**26. ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು.**– (1) ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಸಂಶೋಧನೆ ಮತ್ತು ಅನ್ವೇಷಣಾ ಸಮಿತಿಯಾಗಿರತಕ್ಕದ್ದು ಹಾಗೂ ಸಂಶೋಧನೆ ಮತ್ತು ಅನ್ವೇಷಣಾ ಕ್ಷೇತ್ರಗಳ ಆದ್ಯತೆಯೂ ಒಳಗೊಂಡಂತೆ, ವಿಶ್ವವಿದ್ಯಾಲಯವು ಕೈಗೊಳ್ಳಬೇಕಾದ ಸಂಶೋಧನೆ ಮತ್ತು ಅನ್ವೇಷಣೆಯ ಬಗ್ಗೆ ಒಂದು ವ್ಯಾಪಕವಾದ ಪರಿಪೂರ್ಣ ಭವಿಷ್ಯದ್ ದೃಷ್ಟಿಯನ್ನು ಒದಗಿಸತಕ್ಕದ್ದು. ಈ ಪರಿಷತ್ತು, ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಮತ್ತು ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಸಂಶೋಧನೆ ಮತ್ತು ಅನ್ವೇಷಣಾ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಸಂಶೋಧನೆಯ ಡೀನ್ – ಕಾರ್ಯದರ್ಶಿ

(iv) ಅನ್ವೇಷಣಾ ವಿಭಾಗದ ಮುಖ್ಯಸ್ಥರು – ಸದಸ್ಯರು

(v) ಎಲ್ಲಾ ವ್ಯಾಸಂಗ ವಿಭಾಗಗಳ ಡೀನ್‌ಗಳು – ಸದಸ್ಯರು ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

**27. ಹಣಕಾಸು ಸಮಿತಿ.**– (1) ಹಣಕಾಸು ಸಮಿತಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು ಅಥವಾ ಅವರ ನಾಮನಿರ್ದೇಶಿತರು – ಅಧ್ಯಕ್ಷರು

(ii) ಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಸದಸ್ಯರು

(iv) ಹಣಕಾಸು ಅಧಿಕಾರಿ – ಕಾರ್ಯದರ್ಶಿ

(v) ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು – ಸದಸ್ಯರು; ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಹಣಕಾಸು ಸಮಿತಿಯು ಹಣಕಾಸಿನ ವಿಷಯಗಳನ್ನು ಕೈಗೊಳ್ಳುವ ವಿಶ್ವವಿದ್ಯಾಲಯದ ಪ್ರಧಾನ ಹಣಕಾಸು ಸಂಸ್ಥೆಯಾಗಿರತಕ್ಕದ್ದು ಹಾಗೂ ಅದು ಈ ಅಧಿನಿಯಮ, ನಿಯಮಗಳು ಮತ್ತು ಪರಿನಿಯಮಗಳ ಉಪಬಂಧಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಹಣಕಾಸು ವಿಷಯಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**28. ಇತರ ಪ್ರಾಧಿಕಾರಗಳು.**– ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ರಚನೆ, ಅಧಿಕಾರಗಳು ಹಾಗೂ ಪ್ರಕಾರ್ಯಗಳು ಪರಿನಿಯಮಗಳಿಂದ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

**29. ಒಂದು ಪ್ರಾಧಿಕಾರದ ಅಥವಾ ಸಂಸ್ಥೆಯ ಸದಸ್ಯತ್ವಕ್ಕೆ ಅನರ್ಹತೆ.–** ವಿಶ್ವವಿದ್ಯಾಲಯದ ಸಂಸ್ಥೆಗಳ ಯಾವುವೇ ಪ್ರಾಧಿಕಾರಗಳ ಒಬ್ಬ ವ್ಯಕ್ತಿಯು,–

(ಎ) ಅಸ್ವಸ್ಥ ಚಿತ್ತನಾಗಿದ್ದು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿಸಲ್ಪಟ್ಟಿದ್ದರೆ;

(ಬಿ) ಅವಿಮುಕ್ತ ದಿವಾಳಿಯಾಗಿದ್ದರೆ;

(ಸಿ) ನೈತಿಕ ಅಧ:ಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದರೆ;

(ಡಿ) ಖಾಸಗಿ ಬೋಧನಾ ತರಗತಿಗಳನ್ನು ನಡೆಸುತ್ತಿದ್ದರೆ ಅಥವಾ ಸ್ವತ: ನಿರತನಾಗಿದ್ದರೆ;

(ಇ) ಯಾವುದೇ ವಿಧದಲ್ಲಿ, ಎಲ್ಲಿಯೇ, ಯಾವುದೇ ಪರೀಕ್ಷೆಯನ್ನು ನಡೆಸುವಲ್ಲಿ ಅನುಚಿತ ಅಭ್ಯಾಸದಲ್ಲಿ ತೊಡಗಿದ್ದಕ್ಕಾಗಿ ಅಥವಾ ಉತ್ತೇಜಿಸಿದ್ದಕ್ಕಾಗಿ ದಂಡಿತನಾಗಿದ್ದರೆ;

(ಎಫ್) ಪ್ರಾಯೋಜಿತ ಸಂಸ್ಥೆಯು ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಯಾವೊಬ್ಬ ಸದಸ್ಯನನ್ನು ಆ ಪದವನ್ನು ಹೊಂದಿರುವುದಕ್ಕೆ ಅರ್ಹನಲ್ಲನೆಂದು ಲಿಖಿತದಲ್ಲಿ ಅಭಿಪ್ರಾಯ ನೀಡಿದಾಗಲೆಲ್ಲಾ,

–ಸದಸ್ಯನಾಗಿರುವುದಕ್ಕೆ ಅನರ್ಹನಾಗತಕ್ಕದ್ದು.

**30. ಖಾಲಿಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಕಾರ್ಯ ಅಥವಾ ವ್ಯವಹರಣೆಗಳು ಕೇವಲ ಅದರಲ್ಲಿ ಯಾವುದೇ ಖಾಲಿಸ್ಥಾನ ಇದೆ ಎಂಬ ಕಾರಣದಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣದಿಂದ ಮಾತ್ರವೇ ಅಸಿಂಧುವಾಗತಕ್ಕದ್ದಲ್ಲ.

**31. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು.–** (1) ಯಾವುವೇ ಕಾರ್ಯಸೂಚಿ ವಿಷಯಗಳನ್ನು ಕುಲಾಧಿಪತಿಯವರ ಪೂರ್ವಾನುಮೋದನೆಯನ್ನು ಪಡೆಯದೇ ಪ್ರಬಂಧಕ ಮಂಡಳಿಯ ಅಥವಾ ವ್ಯವಸ್ಥಾಪನಾ ಮಂಡಳಿಯ ಅಥವಾ ಯಾವುದೇ ಸಮಿತಿಯ ಸಭೆಗಳ ಕಾರ್ಯಸೂಚಿ ವಿಷಯಗಳಲ್ಲಿ ಸೇರಿಸತಕ್ಕದ್ದಲ್ಲ ಅಥವಾ ಚರ್ಚೆಗೆ ತೆಗೆದುಕೊಳ್ಳತಕ್ಕದ್ದಲ್ಲ ಮತ್ತು ತೀರ್ಮಾನಿಸತಕ್ಕದ್ದಲ್ಲ.

(2) ಈ ಅಧಿನಿಯಮದ ಯಾವುದೇ ಉಪಬಂಧಗಳನ್ನು ಪಾಲಿಸದೆ ಇರುವ ಸಂದರ್ಭದಲ್ಲಿ, ಕುಲಾಧಿಪತಿಯವರು ವಿಶ್ವವಿದ್ಯಾಲಯದ ಯಾವುದೇ ಪದಾಧಿಕಾರಿ ಅಥವಾ ಸಂಸ್ಥೆಯು ತೆಗೆದುಕೊಂಡ ಎಲ್ಲಾ ತೀರ್ಮಾನಗಳನ್ನು ವಿಪರ್ಯಾಯಗೊಳಿಸುವ ಮೂಲಕ ಪರಿಹಾರ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಅಧಿಕಾರವನ್ನು ಎಲ್ಲಾ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಅಂಥ ಪರಿಹಾರ ಕ್ರಮದ ಪರಿಣಾಮವಾಗಿ ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ವಿಶ್ವವಿದ್ಯಾಲಯದ ಪದಾಧಿಕಾರಿ ಅಥವಾ ಸಂಸ್ಥೆಯು ಕೈಗೊಂಡಿದ್ದ ಎಲ್ಲಾ ಅಂಥ ಕ್ರಮಗಳು, ಮೊದಲಿನಿಂದಲೂ ಶೂನ್ಯ ಮತ್ತು ಅಕೃತ ಎಂದು ಭಾವಿಸತಕ್ಕದ್ದು ಹಾಗೂ ತತ್ಪರಿಣಾಮವಾಗಿ, ಉಪಬಂಧ ಪಾಲಿಸದೇ ಇದ್ದ ವಿಷಯ ಅಥವಾ ನಿರ್ಧಾರದ ಸಂಬಂಧದಲ್ಲಿ ಅದಕ್ಕೆ ಮುಂಚೆ ಇದ್ದ ವಸ್ತುಸ್ಥಿತಿಯೇ ಮುಂದುವರಿಯತಕ್ಕದ್ದು.

## ಅಧ್ಯಾಯ – V

## ಪರಿನಿಯಮಗಳು ಮತ್ತು ವಿನಿಯಮಗಳು

**32. ಪರಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಪರಿನಿಯಮಗಳು ವಿಶ್ವವಿದ್ಯಾಲಯಕ್ಕೆ ಮತ್ತು ಸಿಬ್ಬಂದಿಗೆ ಸಂಬಂಧಿಸಿದ ಎಲ್ಲಾ ಅಥವಾ ಯಾವುದೇ ವಿಷಯಕ್ಕೆ ಈ ಕೆಳಗಿನಂತೆ ಉಪಬಂಧ ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಕಾರ್ಯಕಲಾಪಗಳನ್ನು ನಡೆಸುವ ಮತ್ತು ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸದಿರುವ ಸಂಸ್ಥೆಗಳ ರಚನೆಯ ಕಾರ್ಯವಿಧಾನ;

(ii) ಶಾಶ್ವತ ಶಾಸನಬದ್ಧ ದತ್ತಿ ನಿಧಿ, ವಿಶ್ವವಿದ್ಯಾಲಯ ದತ್ತಿ ನಿಧಿ, ಸಾಮಾನ್ಯ ನಿಧಿ ಹಾಗೂ ಅಭಿವೃದ್ಧಿ ನಿಧಿಗಳ ನಿರ್ವಹಣೆ;

(iii) ಕುಲಪತಿಗಳು, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರ ನೇಮಕಾತಿಯ ನಿಬಂಧನೆಗಳು ಹಾಗೂ ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಪ್ರಕಾರ್ಯಗಳು;

--

(iv) ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ, ಅಧ್ಯಾಪಕರ ಮತ್ತು ನೌಕರರ ನೇಮಕಾತಿ ವಿಧಾನ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(v) ವಿಶ್ವವಿದ್ಯಾಲಯ ಹಾಗೂ ಅದರ ಅಧಿಕಾರಿಗಳು, ವ್ಯಾಸಂಗ ವಿಭಾಗದ (ಫ್ಯಾಕಲ್ಟಿ) ಸದಸ್ಯರು, ನೌಕರರು ಹಾಗೂ ವಿದ್ಯಾರ್ಥಿಗಳ ನಡುವೆ ಉಂಟಾದ ವಿವಾದಗಳನ್ನು ಪರಿಹರಿಸುವ ಕಾರ್ಯವಿಧಾನ;

(vi) ವಿಭಾಗಗಳು ಮತ್ತು ವ್ಯಾಸಂಗ ವಿಭಾಗಗಳ (ಫ್ಯಾಕಲ್ಟಿಗಳ) ಸೃಜನೆ, ರದ್ಧತಿ ಅಥವಾ ಪುನಾರಚನೆ;

(vii) ಇತರ ವಿಶ್ವವಿದ್ಯಾಲಯಗಳು ಅಥವಾ ಉನ್ನತ ಕಲಿಕಾ ಸಂಸ್ಥೆಗಳ ಜೊತೆಯಲ್ಲಿ ಸಹಕರಿಸಬೇಕಾದ ರೀತಿ;

(viii) ಗೌರವ ಪದವಿಗಳ ನೀಡಿಕೆಯ ಕಾರ್ಯವಿಧಾನ;

(ix) ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿವೇತನ ಮಂಜೂರಾತಿಗೆ ಸಂಬಂಧಿಸಿದ ಉಪಬಂಧಗಳು;

(x) ವಿವಿಧ ವ್ಯಾಸಂಗ ಕ್ರಮಗಳಲ್ಲಿನ ಸೀಟುಗಳ ಸಂಖ್ಯೆಗೆ ಸಂಬಂಧಿಸಿದ ಕಾರ್ಯನೀತಿಗಳು ಮತ್ತು ಅಂಥ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಕಾರ್ಯವಿಧಾನ;

(xi) ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಶುಲ್ಕಕ್ಕೆ ಸಂಬಂಧಿಸಿದ ಕಾರ್ಯನೀತಿ;

(xii) ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಉಚಿತ ಶಿಕ್ಷಣ, ಪದಕಗಳು ಹಾಗೂ ಬಹುಮಾನಗಳನ್ನು ಪ್ರಾರಂಭಿಸುವುದು;

(xiii) ಪ್ರಬಂಧಕ ಮಂಡಳಿಯು ನಿರ್ಧರಿಸಬಹುದಾದ ಅಥವಾ ಈ ಅಧಿನಿಯಮದ ಅಡಿಯಲ್ಲಿ ಪರಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬೇಕಾದ ಅಗತ್ಯತೆಯುಳ್ಳ ಯಾವುದೇ ಇತರ ವಿಷಯಗಳು.

33. **ಪರಿನಿಯಮಗಳ ರಚನೆ ವಿಧಾನ.–** (1) ವ್ಯವಸ್ಥಾಪನಾ ಮಂಡಳಿಯು ರಚಿಸಿದ ಮೊದಲ ಶಾಸನಗಳನ್ನು ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ವ್ಯವಸ್ಥಾಪನಾ ಮಂಡಳಿಯು ಸಲ್ಲಿಸಿದ ಮೊದಲ ಪರಿನಿಯಮಗಳನ್ನು ಪ್ರಬಂಧಕ ಮಂಡಳಿಯು ಪರಿಗಣಿಸತಕ್ಕದ್ದು ಹಾಗೂ ತಾನು ಅವಶ್ಯವೆಂದು ಭಾವಿಸಬಹುದಾದ ಅಂಥ ಮಾರ್ಪಾಡುಗಳು, ಯಾವುದಾದರು ಇದ್ದಲ್ಲಿ, ಅವುಗಳೊಡನೆ ತನ್ನ ಅನುಮೋದನೆಯನ್ನು ನೀಡತಕ್ಕದ್ದು.

(3) ವಿಶ್ವವಿದ್ಯಾಲಯವು, ಪ್ರಬಂಧಕ ಮಂಡಳಿಯು ಅನುಮೋದಿಸಿದ ಮೊದಲ ಪರಿನಿಯಮಗಳನ್ನು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ಪ್ರಕಟಿಸತಕ್ಕದ್ದು ಮತ್ತು ತದನಂತರ ಮೊದಲ ಪರಿನಿಯಮಗಳ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

34. **ಪರಿನಿಯಮಗಳ ತಿದ್ದುಪಡಿಯ ಅಧಿಕಾರ.–** ಪ್ರಬಂಧಕ ಮಂಡಳಿಯು ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸಬಹುದು ಅಥವಾ ಪರಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ಅವನ್ನು ನಿರಸನಗೊಳಿಸಬಹುದು.

35. **ವಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ವಿನಿಯಮಗಳು ಈ ಮುಂದಿನ ವಿಷಯಗಳಿಗೆ ಉಪಬಂಧಗಳನ್ನು ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ವಿದ್ಯಾರ್ಥಿ ಪಟ್ಟಿಯಲ್ಲಿ ಅವರುಗಳ ದಾಖಲಾತಿ ಹಾಗೂ ಮುಂದುವರಿಕೆ;

(ii) ವಿಶ್ವವಿದ್ಯಾಲಯದ ಎಲ್ಲಾ ಪದವಿಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ನಿಗದಿಪಡಿಸತಕ್ಕ ವ್ಯಾಸಂಗ ಕ್ರಮಗಳು;

(iii) ಪದವಿಗಳ ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರದಾನ;

(iv) ಸಂಶೋಧನಾ ವೇತನಗಳು (ಫೆಲೋಶಿಪ್), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಪದಕಗಳು ಮತ್ತು ಬಹುಮಾನಗಳನ್ನು ನೀಡಲು ಷರತ್ತುಗಳು;

--

(v) ಪರೀಕ್ಷೆಗಳನ್ನು ನಡೆಸುವುದು ಹಾಗೂ ಪರೀಕ್ಷೆ ನಡೆಸುವ ಸಂಸ್ಥೆಗಳು, ಪರೀಕ್ಷಕರು, ಪರೀಕ್ಷಾ ಮೇಲ್ವಿಚಾರಕರು, ಟ್ಯಾಬುಲೇಟರ್‌ಗಳು ಮತ್ತು ಮಾಡರೇಟರ್‌ಗಳ ನೇಮಕಾತಿ ಷರತ್ತುಗಳು ಮತ್ತು ವಿಧಾನ ಹಾಗೂ ಅವರ ಕರ್ತವ್ಯಗಳು;

(vi) ವಿಶ್ವವಿದ್ಯಾಲಯದ ಪರೀಕ್ಷೆಗಳಿಗೆ, ಪದವಿಗಳಿಗೆ ಹಾಗೂ ಇತರ ಶೈಕ್ಷಣಿಕ ಪ್ರಶಸ್ತಿಗಳಿಗೆ ಪ್ರವೇಶಕ್ಕೆ ವಿಧಿಸತಕ್ಕ ಶುಲ್ಕ;

(vii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನಲ್ಲಿ ವಿದ್ಯಾರ್ಥಿಗಳ ನಿವಾಸಕ್ಕಾಗಿ ಷರತ್ತುಗಳು;

(viii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಶಿಸ್ತು ಪಾಲನೆ;

(ix) ಈ ಅಧಿನಿಯಮದ ಅಡಿಯಲ್ಲಿನ ಪರಿನಿಯಮಗಳಲ್ಲಿ ಉಪಬಂಧ ಕಲ್ಪಿಸಬಹುದಾಂಥ ಇತರ ಎಲ್ಲಾ ವಿಷಯಗಳು.

**36. ವಿನಿಯಮಗಳ ರಚನೆ ವಿಧಾನ.**– ವಿನಿಯಮಗಳನ್ನು ಶೈಕ್ಷಣಿಕ ಪರಿಷತ್ತು ರಚಿಸತಕ್ಕದ್ದು ಹಾಗೂ ವ್ಯವಸ್ಥಾಪನಾ ಮಂಡಳಿಯು ಅನುಮೋದಿಸತಕ್ಕದ್ದು.

**37. ವಿನಿಯಮಗಳ ತಿದ್ದುಪಡಿಗೆ ಅಧಿಕಾರ.**– ವ್ಯವಸ್ಥಾಪನಾ ಮಂಡಳಿಯ ಅನುಮೋದನೆಯೊಡನೆ ಶೈಕ್ಷಣಿಕ ಪರಿಷತ್ತು ಹೊಸ ವಿನಿಯಮಗಳನ್ನು ಅಥವಾ ಹೆಚ್ಚುವರಿ ವಿನಿಯಮಗಳನ್ನು ರಚಿಸಬಹುದು ಅಥವಾ ವಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ನಿರಸನಗೊಳಿಸಬಹುದು.

**38. ಶುಲ್ಕ ನಿಯಂತ್ರಣ ಸಮಿತಿ.**– (1) ಸರ್ಕಾರವು ರಚಿಸಿದ ನಿವೃತ್ತ ಸರ್ವೋಚ್ಚ ನ್ಯಾಯಾಲಯದ ಅಥವಾ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು ಮುಖ್ಯಸ್ಥರಾಗಿರುವ ಮತ್ತು ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ, ಉನ್ನತ ಶಿಕ್ಷಣ ಪ್ರಭಾರದಲ್ಲಿರುವ ಸರ್ಕಾರದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು ವೈದ್ಯಕೀಯ ಶಿಕ್ಷಣದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು ಒಬ್ಬ ಮಹಿಳೆಯೂ ಸೇರಿದಂತೆ ಪ್ರಬಂಧಕ ಮಂಡಳಿಯು ನಾಮನಿರ್ದೇಶಿಸಿದ ಇಬ್ಬರು ಶಿಕ್ಷಣ ತಜ್ಞರು ಇವರುಗಳನ್ನು ಒಳಗೊಂಡ ಒಂದು ಶುಲ್ಕ ನಿಯಂತ್ರಣ ಸಮಿತಿಯು, 9ನೇ ಪ್ರಕರಣದ ಅಡಿಯಲ್ಲಿ ಕರ್ನಾಟಕದ ವಿದ್ಯಾರ್ಥಿಗಳಿಗಾಗಿ ಮೀಸಲಿರಿಸಿದ ವಿಶ್ವವಿದ್ಯಾಲಯದ ಸ್ಥಾನಗಳ ಶುಲ್ಕವನ್ನು ನಿಯಂತ್ರಿಸತಕ್ಕದ್ದು. ಸಮಿತಿಯಲ್ಲಿ ಈ ಉದ್ದೇಶಕ್ಕಾಗಿ ಒಬ್ಬರು ಖ್ಯಾತ ಚಾರ್ಟರ್ಡ್ ಅಕೌಂಟೆಂಟ್ ರವರನ್ನು ಸಹ ಸದಸ್ಯನನ್ನಾಗಿ ಸೇರಿಸಿಕೊಳ್ಳತಕ್ಕದ್ದು.

(2) ಸಮಿತಿಯು ವಿಶ್ವವಿದ್ಯಾಲಯದ ಪ್ರವೇಶಗಳ ಮತ್ತು ಶುಲ್ಕದ ಸಂಗ್ರಹಣೆಯ ಅನುಪಾಲನೆಯನ್ನು ನೋಡಿಕೊಳ್ಳತಕ್ಕದ್ದು.

## ಅಧ್ಯಾಯ – VI

## ಸಂಕೀರ್ಣ

**39. ನೌಕರರ ಸೇವಾ ಷರತ್ತುಗಳು.**– (1) ಪರಿನಿಯಮಗಳ ಮತ್ತು ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಥವಾ ನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳು, ಯಾವುದಾದರೂ ಇದ್ದಲ್ಲಿ, ಅವುಗಳಿಗೆ ಒಳಪಟ್ಟು ಪ್ರತಿಯೊಬ್ಬ ನೌಕರನು ಲಿಖಿತ ಕರಾರಿನ ಅಡಿಯಲ್ಲಿ ನೇಮಕಗೊಳ್ಳತಕ್ಕದ್ದು ಮತ್ತು ಅದನ್ನು ವಿಶ್ವವಿದ್ಯಾಲಯದಲ್ಲಿ ಇಟ್ಟುಕೊಳ್ಳತಕ್ಕದ್ದು ಹಾಗೂ ಅದರ ಪ್ರತಿಯನ್ನು ಸಂಬಂಧಪಟ್ಟ ನೌಕರನಿಗೆ ನೀಡತಕ್ಕದ್ದು.

(2) ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಕಾರ್ಯವಿಧಾನಗಳ ಮೂಲಕ ನಿಯಂತ್ರಿಸತಕ್ಕದ್ದು.

(3) ಕರಾರಿನಿಂದಾಗಿ ವಿಶ್ವವಿದ್ಯಾಲಯ ಮತ್ತು ನೌಕರನ ಮಧ್ಯದಲ್ಲಿ ಉದ್ಭವಿಸಬಹುದಾದ ಯಾವುದೇ ವಿವಾದವನ್ನು, ಲಿಖಿತ ಕರಾರಿನಲ್ಲಿ ಉಪಬಂಧಿಸಿದ ವಿಧಾನದಲ್ಲಿ ಹಾಗೂ ಪರಿನಿಯಮಗಳ ಅನುಸಾರವಾಗಿ ಪರಿಹರಿಸತಕ್ಕದ್ದು.

**40. ಮೇಲ್ಮನವಿ ಹಕ್ಕು.**– ವಿಶ್ವವಿದ್ಯಾಲಯವು ತನ್ನ ನೌಕರರ ಅಥವಾ ವಿದ್ಯಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡ ಸಂದರ್ಭದಲ್ಲಿ, ಬಾಧಿತ ನೌಕರ ಅಥವಾ ವಿದ್ಯಾರ್ಥಿಗಳು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಮೇಲ್ಮನವಿ ಹಕ್ಕನ್ನು ಹೊಂದಿರತಕ್ಕದ್ದು.

**41. ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿ** .- ವಿಶ್ವವಿದ್ಯಾಲಯವು, ತನ್ನ ನೌಕರರ ಪ್ರಯೋಜನಕ್ಕಾಗಿ, ಪರಿನಿಯಮಗಳು ಮತ್ತು ಜಾರಿಯಲ್ಲಿರುವ ಕಾನೂನುಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿಯನ್ನು ರಚಿಸತಕ್ಕದ್ದು ಹಾಗೂ ಅಂಥ ವಿಮಾ ಯೋಜನೆಗಳನ್ನು ಒದಗಿಸತಕ್ಕದ್ದು.

**42. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು.**- ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಇತರ ಸಂಸ್ಥೆಯ ಸದಸ್ಯನಾಗಿ ಯಾವೊಬ್ಬ ವ್ಯಕ್ತಿಯು ಸೂಕ್ತವಾಗಿ ಆಯ್ಕೆಯಾಗಿದ್ದಾನೆಯೇ ಅಥವಾ ನೇಮಕಗೊಂಡಿದ್ದಾನೆಯೇ ಅಥವಾ ಅದಕ್ಕೆ ಅರ್ಹನಾಗಿದ್ದಾನೆಯೇ ಎಂಬ ಯಾವುದೇ ಪ್ರಶ್ನೆ ಉದ್ಭವಿಸಿದರೆ, ಆ ವಿಷಯವನ್ನು ತೀರ್ಮಾನಕ್ಕಾಗಿ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**43. ಸಮಿತಿಗಳ ರಚನೆ.**- 22ನೇ ಪ್ರಕರಣದಲ್ಲಿ ನಮೂದಿಸಿದ ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಅಧಿಕಾರವನ್ನು ಹೊಂದಿರುವ ಅಂಥ ಸದಸ್ಯರನ್ನು ಒಳಗೊಂಡ ಅಂಥ ಪ್ರಾಧಿಕಾರದ ಒಂದು ಸಮಿತಿಯನ್ನು ರಚಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**44. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು.**- ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಂಸ್ಥೆಯ ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ಪೈಕಿ ಯಾವುದೇ ಸ್ಥಾನವು ಆಕಸ್ಮಿಕವಾಗಿ ಖಾಲಿಯಾದರೆ, ಯಾರ ಸ್ಥಾನವು ಖಾಲಿಯಾಗಿ ತುಂಬಬೇಕಾಗಿ ಬಂದಿದೆಯೋ ಆ ಸದಸ್ಯನನ್ನು ಯಾವ ರೀತಿಯಲ್ಲಿ ಆರಿಸಲಾಗಿತ್ತೋ ಅದೇ ರೀತಿಯಲ್ಲಿ ಹೊಸ ಸದಸ್ಯನನ್ನು ಆರಿಸಿ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ಖಾಲಿ ಸ್ಥಾನವನ್ನು ಭರ್ತಿ ಮಾಡಿದ ವ್ಯಕ್ತಿಯು ಆತನು ಯಾವ ಸದಸ್ಯನ ಸ್ಥಾನದಲ್ಲಿ ಭರ್ತಿಯಾಗಿರುವನೋ ಆ ಸದಸ್ಯನು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯನಾಗಿ ಉಳಿಯುತ್ತಿದ್ದ ಬಾಕಿ ಅವಧಿಯವರೆಗೆ ಮಾತ್ರ ಸದಸ್ಯನಾಗಿರತಕ್ಕದ್ದು.

**45. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.**- ಈ ಅಧಿನಿಯಮ ಅಥವಾ ಪರಿನಿಯಮಗಳು ಅಥವಾ ನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ವಿಶ್ವವಿದ್ಯಾಲಯದ ಯಾವೊಬ್ಬ ಅಧಿಕಾರಿ ಅಥವಾ ಇತರ ನೌಕರರ ವಿರುದ್ಧ ಯಾವುದೇ ದಾವೆ ಅಥವಾ ಇತರ ಕಾನೂನು ವ್ಯವಹರಣೆಗಳನ್ನು ನಡೆಸಲು ಅವಕಾಶ ಇರತಕ್ಕದ್ದಲ್ಲ.

**46. ತಾತ್ಕಾಲಿಕ ಉಪಬಂಧಗಳು.**- ಈ ಅಧಿನಿಯಮ ಮತ್ತು ಪರಿನಿಯಮಗಳ ಯಾವುದೇ ಇತರ ಉಪಬಂಧಗಳಲ್ಲಿ ಏನೇ ಇದ್ದರೂ,-

(i) ಮೊದಲ ಕುಲಪತಿ ಮತ್ತು ಸಹಕುಲಪತಿ, ಯಾರಾದರೂ ಇದ್ದರೆ, ಅವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(ii) ಮೊದಲ ಕುಲಸಚಿವರನ್ನು ಮತ್ತು ಮೊದಲ ಹಣಕಾಸು ಅಧಿಕಾರಿಯವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು; ಮತ್ತು

(iii) ಮೊದಲ ವ್ಯವಸ್ಥಾಪನ ಮಂಡಳಿ, ಮೊದಲ ಹಣಕಾಸು ಸಮಿತಿ, ಮೊದಲ ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಹಾಗೂ ಮೊದಲ ಶೈಕ್ಷಣಿಕ ಪರಿಷತ್ತನ್ನು ಕುಲಾಧಿಪತಿಯವರು ರಚಿಸತಕ್ಕದ್ದು.

**47. ಶಾಶ್ವತ ಶಾಸನಬದ್ಧ ದತ್ತಿ ನಿಧಿ.**- ((1) ವಿಶ್ವವಿದ್ಯಾಲಯವು, ಕನಿಷ್ಠ ಇಪ್ಪತ್ತೈದು ಕೋಟಿ ರೂಪಾಯಿಗಳನ್ನುಳ್ಳ ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು ಇದರ ಪೈಕಿ ಕನಿಷ್ಠ ಹದಿನೈದು ಕೋಟಿ ರೂಪಾಯಿಗಳು ನಗದು ರೂಪದಲ್ಲಿ ಮತ್ತು ಇನ್ನುಳಿದದ್ದು ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ಇರತಕ್ಕದ್ದು ಮತ್ತು ಇದನ್ನು ತಾನಾಗಿಯೆ ಹೆಚ್ಚಿಸಬಹುದಾಗಿದ್ದು ಆದರೆ ಕಡಿಮೆ ಮಾಡತಕ್ಕದ್ದಲ್ಲ.

ಪರಂತು, ಬೆಂಗಳೂರು ಅಥವಾ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊರಗಿರುವ ವಿಶ್ವವಿದ್ಯಾಲಯದ ಸಂದರ್ಭದಲ್ಲಿ ಕನಿಷ್ಠ ಹತ್ತು ಕೋಟಿ ರೂಪಾಯಿಗಳು ನಗದು ರೂಪದಲ್ಲಿರತಕ್ಕದ್ದು ಮತ್ತು ಉಳಿದ ಐದು ಕೋಟಿ ರೂಪಾಯಿಗಳು ಬ್ಯಾಂಕ್ ಗ್ಯಾರಂಟಿಯ ರೂಪದಲ್ಲಿರತಕ್ಕದ್ದು.

(2) ವಿಶ್ವವಿದ್ಯಾಲಯವು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಹಣವನ್ನು ಹೂಡಲು ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯವು ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಗೆ ವರ್ಗಾವಣೆ ಮಾಡಬಹುದು. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಸಂದರ್ಭವನ್ನು

ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನೂ ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(4) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಿದ ವರಮಾನದ ಶೇಕಡಾ ಎಪ್ಪತ್ತೈದರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತೈದರಷ್ಟನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಯಲ್ಲಿ ಪುನ: ತೊಡಗಿಸತಕ್ಕದ್ದು.

**48. ವಿಶ್ವವಿದ್ಯಾಲಯದ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ನಿಧಿಗಳನ್ನು ಒಳಗೊಂಡ ವಿಶ್ವವಿದ್ಯಾಲಯದ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದು ಕಾಲಕಾಲಕ್ಕೆ ಸ್ವೀಕರಿಸಬಹುದಾದ ದೇಣಿಗೆಗಳು ಮತ್ತು ಇತರ ನಿಧಿಗಳನ್ನು ಒಳಗೊಂಡಿರತಕ್ಕದ್ದು.

(2) ವಿಶ್ವವಿದ್ಯಾಲಯವು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ವಿಶ್ವವಿದ್ಯಾಲಯದ ದತ್ತಿನಿಧಿಯನ್ನು ಹೂಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯ ದತ್ತಿ ನಿಧಿಯು, ವಿಶ್ವವಿದ್ಯಾಲಯವು ತನ್ನ ಸಾಮಾಜಿಕ ಧ್ಯೇಯೋದ್ದೇಶಗಳನ್ನು ನೆರವೇರಿಸುವ ಸಂದರ್ಭದಲ್ಲಿ ಮತ್ತು/ಅಥವಾ ಮುಂಗಾಣದ ಸನ್ನಿವೇಶದಲ್ಲಿ ಉದ್ಭವಿಸಬಹುದಾದ ಹಣಕಾಸು ಸವಾಲುಗಳಿಂದ ತನ್ನನ್ನು ರಕ್ಷಿಸಿಕೊಳ್ಳುವುದಕ್ಕಾಗಿ, ಸ್ವಇಚ್ಛೆಯಿಂದ ನಿರ್ವಹಿಸಿಕೊಂಡು ಬರಲು ಮತ್ತು ಜವಾಬ್ದಾರಿಯಿಂದ ಹಣ ಹೂಡಿಕೆ ಮಾಡಲು ಇಚ್ಛೆಯುಳ್ಳವರಾಗಿ ಸ್ವಯಂ ವಿಧಿಸಿಕೊಂಡ ನಿಧಿಯಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಗೆ ವರ್ಗಾಯಿಸಬಹುದು. ವಿಶ್ವವಿದ್ಯಾಲಯದ ಸಮಾಪಣೆಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನು ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(5) ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಬರುವ ವರಮಾನದ ಶೇಕಡಾ ಎಂಭತ್ತರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸದ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತರಷ್ಟನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**49. ಸಾಮಾನ್ಯ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಸಾಮಾನ್ಯ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯವು ವಿಧಿಸಬಹುದಾದ ಎಲ್ಲಾ ಶುಲ್ಕಗಳು;

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವುದೇ ಇತರ ಮೂಲದಿಂದ ಸ್ವೀಕರಿಸಲಾದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ದೇಣಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು;

(2) ಸಾಮಾನ್ಯ ನಿಧಿಗೆ ಜಮಾ ಮಾಡುವ ನಿಧಿಗಳನ್ನು ವಿಶ್ವವಿದ್ಯಾಲಯದ ಎಲ್ಲಾ ಆವರ್ತಕ ವೆಚ್ಚಗಳನ್ನು ಭರಿಸಲು ಉಪಯೋಗಿಸಿಕೊಳ್ಳತಕ್ಕದ್ದು.

**50. ಅಭಿವೃದ್ಧಿ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಅಭಿವೃದ್ಧಿ ನಿಧಿಯನ್ನು ಸಹ ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ವಿದ್ಯಾರ್ಥಿಗಳಿಂದ ವಿಧಿಸಬಹುದಾದ ಅಭಿವೃದ್ಧಿ ಶುಲ್ಕಗಳು;

(ii) ವಿಶ್ವವಿದ್ಯಾಲಯದ ಅಭಿವೃದ್ಧಿಯ ಉದ್ದೇಶಗಳಿಗಾಗಿ ಯಾವುದೇ ಇತರ ಮೂಲಗಳಿಂದ ಸ್ವೀಕರಿಸಿದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ವಂತಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ [illegible]ರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು / ವಂತಿಗೆಗಳು; ಮತ್ತು

(v) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಲಾದ ಎಲ್ಲಾ ವರಮಾನಗಳು.

(2) ಅಭಿವೃದ್ಧಿ ನಿಧಿಗೆ ಕಾಲಕಾಲಕ್ಕೆ ಜಮಾ ಮಾಡಿದ ನಿಧಿಯನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಉಪಯೋಗಿಸಕೊಳ್ಳತಕ್ಕದ್ದು.

**51. ನಿಧಿಗಳ ನಿರ್ವಹಣೆ.**– 47, 48, 49 ಮತ್ತು 50ನೇ ಪ್ರಕರಣಗಳಡಿಯಲ್ಲಿ ಸ್ಥಾಪಿಸಲಾದ ನಿಧಿಗಳನ್ನು ಪ್ರಬಂಧಕ ಮಂಡಳಿಯ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ನಿಯಂತ್ರಿಸತಕ್ಕದ್ದು ಹಾಗೂ ನಿರ್ವಹಿಸತಕ್ಕದ್ದು.

**52. ವಾರ್ಷಿಕ ವರದಿ.**– (1) ವಿಶ್ವವಿದ್ಯಾಲಯದ ವಾರ್ಷಿಕ ವರದಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ಅದರ ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಪ್ರಬಂಧಕ ಮಂಡಳಿಯು ವಾರ್ಷಿಕ ವರದಿಯನ್ನು ತನ್ನ ಸಭೆಯಲ್ಲಿ ಪರಿಗಣಿಸತಕ್ಕದ್ದು ಹಾಗೂ ಅದನ್ನು ಮಾರ್ಪಾಡುಗಳೊಡನೆ ಅಥವಾ ಮಾರ್ಪಾಡುಗಳಿಲ್ಲದೆ ಅನುಮೋದಿಸಬಹುದು.

(3) ಪ್ರಬಂಧಕ ಮಂಡಳಿಯು ಸೂಕ್ತವಾಗಿ ಅನುಮೋದಿಸಿದ ವಾರ್ಷಿಕ ವರದಿಯ ಒಂದು ಪ್ರತಿಯನ್ನು ಪ್ರತಿವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ಡಿಸೆಂಬರ್ 31ಕ್ಕೆ ಮೊದಲು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**53. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.**– (1) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕ ಪತ್ರ ಮತ್ತು ಜಮಾ ಖರ್ಚು ಪಟ್ಟಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯಕ್ಕೆ ಎಲ್ಲಾ ಮೂಲಗಳಿಂದ ಪ್ರಾಪ್ತವಾಗುವ ಅಥವಾ ಸ್ವೀಕರಿಸಲಾಗುವ ಎಲ್ಲಾ ನಿಧಿಗಳು ಹಾಗೂ ವಿತರಿಸಿದ ಅಥವಾ ಸಂದಾಯ ಮಾಡಿದ ಎಲ್ಲಾ ಮೊಬಲಗುಗಳನ್ನು ವಿಶ್ವವಿದ್ಯಾಲಯವು ನಿರ್ವಹಿಸುವ ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕಪತ್ರಗಳನ್ನು ಪ್ರತಿ ವರ್ಷವೂ ಭಾರತದ ಚಾರ್ಟೆಡ್ ಅಕೌಂಟೆಂಟ್‌ಗಳ ಸಂಸ್ಥೆಯ ಸದಸ್ಯರಾಗಿರುವ ಒಬ್ಬ ಲೆಕ್ಕಪರಿಶೋಧಕರಿಂದ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಲೆಕ್ಕಪರಿಶೋಧನಾ ವರದಿಯೊಡನೆ, ಪ್ರತಿ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ನವೆಂಬರ್ 30ಕ್ಕೆ ಮೊದಲು ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(4) ವಾರ್ಷಿಕ ಲೆಕ್ಕಪತ್ರಗಳು, ಜಮಾಖರ್ಚು ಪಟ್ಟಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಪ್ರಬಂಧಕ ಮಂಡಳಿಯು ತನ್ನ ಸಭೆಯಲ್ಲಿ ಪರ್ಯಾಲೋಚಿಸತಕ್ಕದ್ದು ಮತ್ತು ಪ್ರಬಂಧಕ ಮಂಡಳಿಯು ಅದನ್ನು ತನ್ನ ಅಭಿಪ್ರಾಯಗಳೊಡನೆ ಸಂದರ್ಶಕರಿಗೆ ಹಾಗೂ ಸರ್ಕಾರಕ್ಕೆ ಪ್ರತಿ ವರ್ಷದ ಡಿಸೆಂಬರ್ 31ಕ್ಕೆ ಮೊದಲು ಕಳುಹಿಸತಕ್ಕದ್ದು.

**54. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ.**– ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಮಿತಿಯ ಯಾವುದೇ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ ಅಥವಾ ಗೊತ್ತುವಳಿಯು ಅಥವಾ ವಿಶ್ವವಿದ್ಯಾಲಯದ ಸ್ವಾಧೀನದಲ್ಲಿರುವ ಇತರ ದಾಖಲೆಗಳು ಅಥವಾ ವಿಶ್ವವಿದ್ಯಾಲಯವು ಯುಕ್ತವಾಗಿ ನಿರ್ವಹಿಸುವ ಯಾವುದೇ ರಿಜಿಸ್ಟರ್‌ನಲ್ಲಿಯ ಯಾವುದೇ ನಮೂದುಗಳ ಪ್ರತಿಯನ್ನು, ಅದರ ಮೇಲೆ ಕುಲಸಚಿವರು ಪ್ರಮಾಣೀಕರಿಸಿದ್ದರೆ, ಅದನ್ನು ಅಂಥ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ, ಗೊತ್ತುವಳಿ ಅಥವಾ ದಾಖಲೆ ಅಥವಾ ರಿಜಿಸ್ಟರ್‌ನಲ್ಲಿ ಇರುವ ನಮೂದನ್ನು ಮೇಲ್ನೋಟದ ಸಾಕ್ಷ್ಯವೆಂಬುದಾಗಿ ಸ್ವೀಕರಿಸತಕ್ಕದ್ದು ಮತ್ತು ವಿಷಯಗಳ ಸಾಕ್ಷಿಯಾಗಿ ಅಂಗೀಕರಿಸತಕ್ಕದ್ದು ಹಾಗೂ ಮೂಲ ದಾಖಲೆಗಳನ್ನೇ ಸಲ್ಲಿಸಿದ್ದರೆ ಅದನ್ನು, ದಾಖಲಿಸಿರುವ ವಿಷಯಗಳು ಮತ್ತು ವಹಿವಾಟುಗಳ ಸಾಕ್ಷ್ಯವಾಗಿ ಅಂಗೀಕರಿಸಲಾಗುತ್ತಿತ್ತೋ, ಅದೇ ರೀತಿಯಲ್ಲಿ ಇವನ್ನೂ ಸಾಕ್ಷ್ಯವಾಗಿ ಅಂಗೀಕರಿಸತಕ್ಕದ್ದು.

**55. ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ.**– ರಾಜ್ಯಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಥವಾ ಅದರಲ್ಲಿ ಇರುವ ಯಾವುವೇ ಉಪಬಂಧಗಳನ್ನು ಅಥವಾ ಅದರಡಿಯಲ್ಲಿ ರಚಿಸಿದ ಯಾವುವೇ ನಿಯಮಗಳು ಅಥವಾ ಆದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿರ್ದೇಶನ ನೀಡುವುದು ಅವಶ್ಯವೆಂದು ಅಥವಾ ಉಚಿತವೆಂದು ಅಭಿಪ್ರಾಯಪಟ್ಟಲ್ಲಿ ಅದು ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ ಅಥವಾ ಸಂದರ್ಭಾನುಸಾರವಾಗಿ ವ್ಯವಸ್ಥಾಪನಾ ಮಂಡಳಿಯು ಅಂಥ ಪ್ರತಿಯೊಂದು ನಿರ್ದೇಶನವನ್ನು ಪಾಲಿಸತಕ್ಕದ್ದು.

**56.** ದಂಡಗಳು.– (1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿತವಾದ ನಿಯಮಗಳು ಉಪಬಂಧಗಳನ್ನು ಅಥವಾ ಯಾವುದೇ ಪರೀಕ್ಷಾ ವಿಷಯಗಳನ್ನು ಅಥವಾ ಪದವಿಗಳನ್ನು ನೀಡುವುದಕ್ಕೆ ಅಥವಾ ಅಂಕಪಟ್ಟಿಗಳನ್ನು ನೀಡುವುದಕ್ಕೆ ಸಂಬಂಧಪಟ್ಟ ವಿಷಯಗಳಲ್ಲಿ ಉಲ್ಲಂಘನೆಗಳನ್ನು ಮಾಡುವ ಯಾವೊಬ್ಬ ವ್ಯಕ್ತಿಯು, ಅಪರಾಧ ನಿರ್ಣಯವಾದ ಮೇಲೆ, ಐವತ್ತು ಸಾವಿರ ರೂಪಾಯಿಗಳಿಗೆ ಕಡಿಮೆಯಲ್ಲದ ಆದರೆ ಹತ್ತು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಆರು ತಿಂಗಳ ಅವಧಿಗಿಂತ ಕಡಿಮೆಯಲ್ಲದ ಆದರೆ ಎರಡು ವರ್ಷಗಳ ಅವಧಿಯವರೆಗೆ ವಿಸ್ತರಿಸಬಹುದಾದ ಕಾರಾವಾಸದಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು:

ಪರಂತು, ವಿಶ್ವವಿದ್ಯಾಲಯವೂ ಸಹ ಒಳಗೊಂಡಿರುವಲ್ಲಿ, ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಈ ಅಧಿನಿಯಮದ ಅಡಿಯಲ್ಲಿ ನೀಡಲಾದ ಅನುಮತಿ ಪತ್ರವನ್ನು ಹಿಂತೆಗೆದುಕೊಳ್ಳತಕ್ಕದ್ದು.

(2) ಈ ಪ್ರಕರಣದ ಅಡಿಯಲ್ಲಿನ ದಂಡವನ್ನು ಇತರ ಯಾವುದೇ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಲಾದ ದಂಡಕ್ಕೆ ಬಾಧಕವಾಗದಂತೆ ವಿಧಿಸಬಹುದು.

**57.** ಪ್ರವೇಶಿಸುವ ಮತ್ತು ಪರಿಶೋಧಿಸುವ ಅಧಿಕಾರ.– ಈ ಉದ್ದೇಶಕ್ಕಾಗಿ, ರಾಜ್ಯಸರ್ಕಾರದಿಂದ ಪ್ರಾಧಿಕೃತಗೊಂಡ 'ಎ' ಸಮೂಹದ ಅಧಿಕಾರಿ ದರ್ಜೆಗಿಂತ ಕಡಿಮೆ ಇಲ್ಲದ ದರ್ಜೆಯ ಯಾವೊಬ್ಬ ಅಧಿಕಾರಿಯು, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಶನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ 37) ಅಡಿಯಲ್ಲಿ ನಿರ್ದಿಷ್ಟಪಡಿಸಿರಬಹುದಾದ ಅಂಥ ಷರತ್ತುಗಳಿಗೆ ಒಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ, ಆ ಅಧಿನಿಯಮದ 9ನೇ ಪ್ರಕರಣದ ಅಡಿಯಲ್ಲಿ ಉಪಬಂಧಿಸಲಾದಂತಹವೇ ಅಧಿಕಾರಗಳನ್ನು ಚಲಾಯಿಸಲು ಮತ್ತು ಪ್ರಕಾರ್ಯಗಳನ್ನು ನೆರವೇರಿಸಲು ಅಧಿಕೃತನಾದ ಅಧಿಕಾರಿ ಎಂಬುದಾಗಿ ಭಾವಿಸತಕ್ಕದ್ದು.

**58.** ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ನಿರ್ದೇಶನವನ್ನು ನೀಡುವ ಅಧಿಕಾರ.– (1) ವಿಶ್ವವಿದ್ಯಾಲಯವು ತನ್ನ ರಚನೆ ಅಥವಾ ನಿಗಮನವನ್ನು ನಿಯಂತ್ರಿಸುವ ಕಾನೂನಿಗೆ ಅನುಸಾರವಾಗಿ ತನ್ನ ಸಮಾಪನವನ್ನು ಉದ್ದೇಶಿಸಿದ್ದಲ್ಲಿ, ಅದು ಕನಿಷ್ಠ ಆರು ತಿಂಗಳ ಲಿಖಿತ ಪೂರ್ವ ಸೂಚನೆಯನ್ನು (ನೋಟಿಸು) ಸರ್ಕಾರಕ್ಕೆ ನೀಡತಕ್ಕದ್ದು.

(2) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಈ ಕೆಳಗಿನವುಗಳ ಬಗ್ಗೆ, ಎಂದರೆ:–

(i) ಪದವಿಯನ್ನು ನೀಡುವುದಕ್ಕಾಗಿ ಬೋಧನೆಯ ಗುಣಮಟ್ಟ;

(ii) ಶಿಕ್ಷಣದ ಗುಣಮಟ್ಟ;

(iii) ಉನ್ನತ ಶಿಕ್ಷಣದ ವ್ಯಾಪಾರೀಕರಣವನ್ನು ತಡೆಗಟ್ಟುವುದು;

(iv) ಅಧಿನಿಯಮದ ಉಪಬಂಧಗಳ ಉಲ್ಲಂಘನೆಯ ಬಗ್ಗೆ, ಯಾವುದಾದರೂ ಇದ್ದಲ್ಲಿ,

– ಇವುಗಳ ಬಗ್ಗೆ ನಿಯತಕಾಲಿಕ ಪರಿವೀಕ್ಷಣೆಯನ್ನು ನಡೆಸತಕ್ಕದ್ದು ಮತ್ತು ಸರ್ಕಾರಕ್ಕೆ ವರದಿಯನ್ನು ಕಳುಹಿಸತಕ್ಕದ್ದು.

(3) ದುರ್ವ್ಯವಹರಣೆ, ದುರಾಡಳಿತ ಮತ್ತು ಅಶಿಸ್ತು ಆಗಿದೆ ಎಂಬುದನ್ನು ಗುರುತಿಸಿದರೆ, ಸರ್ಕಾರವು, ವಿಶ್ವವಿದ್ಯಾಲಯದ ಆಡಳಿತವರ್ಗದವರಿಗೆ ಆಡಳಿತವನ್ನು ಸರಿಪಡಿಸಬೇಕೆಂದು ನಿರ್ದೇಶನಗಳನ್ನು ನೀಡತಕ್ಕದ್ದು. ನಿಯಮಿಸಬಹುದಾದ ಅಂಥ ಅವಧಿಯೊಳಗೆ ಆ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುವ ಹಕ್ಕು ಸರ್ಕಾರದಲ್ಲಿ ನಿಹಿತವಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ವಿಧಾನವು, ಸರ್ಕಾರವು ಈ ಸಂಬಂಧದಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು:

ಪರಂತು, ವಿಶ್ವವಿದ್ಯಾಲಯವು ತನ್ನ ಕಾರಣಗಳನ್ನು ಹೇಳಿಕೊಳ್ಳಲು ಸಮಂಜಸ ಅವಕಾಶಗಳನ್ನು ನೀಡಿದ ಹೊರತು ಅಂಥ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

(5) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೋಟಿಸನ್ನು ಸ್ವೀಕರಿಸಿದ ಮೇಲೆ, ಸರ್ಕಾರವು ಸಂಬಂಧಿಸಿದ ನಿಯಂತ್ರಣಾ ಪ್ರಾಧಿಕಾರದೊಡನೆ ಸಮಾಲೋಚಿಸಿ, ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ಅಥವಾ ವ್ಯಾಸಂಗ ಕ್ರಮವನ್ನು ಪರಿಸಮಾಪನಗೊಳಿಸಲು ಉದ್ದೇಶಿಸಿದ ದಿನಾಂಕದಿಂದ, ವಿಶ್ವವಿದ್ಯಾಲಯದಲ್ಲಿ ನಿಯತ ವ್ಯಾಸಂಗ ಕ್ರಮಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕೊನೆಯ ತಂಡ (ಬ್ಯಾಚ್) ತನ್ನ ವ್ಯಾಸಂಗ ಕ್ರಮವನ್ನು ಮುಗಿಸುವವರೆಗೆ ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು.

--

**59. ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು.–** (1) 58ನೇ ಪ್ರಕರಣದ (5)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ಅದರ ಆಡಳಿತಾತ್ಮಕ ವೆಚ್ಚಗಳನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ನೇಮಿಸಬಹುದಾದ ಅಂಥ ವಿಧಾನದಲ್ಲಿ ಭರಿಸತಕ್ಕದ್ದು.

(2) ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ವಿಶ್ವವಿದ್ಯಾಲಯದ ವೆಚ್ಚವನ್ನು ಭರಿಸಲು 47, 48, 49 ಮತ್ತು 50ನೇ ಪ್ರಕರಣಗಳ ಅಡಿಯಲ್ಲಿ ಉಲ್ಲೇಖಿಸಲಾದ ನಿಧಿಯು ಸಾಕಷ್ಟು ಇಲ್ಲದಿದ್ದಲ್ಲಿ, ಅಂಥ ವೆಚ್ಚವನ್ನು ಸರ್ಕಾರವು, ವಿಶ್ವವಿದ್ಯಾಲಯದ ಸ್ವತ್ತುಗಳು ಮತ್ತು ಆಸ್ತಿಗಳನ್ನು ವಿಲೇ ಮಾಡುವ ಮೂಲಕ ಭರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಸಮಾಪನೆಯು ದುರ್ವ್ಯವಹರಣೆ ಅಥವಾ ದುರಾಡಳಿತದ ಕಾರಣಗಳಿಗಾಗಿ ಆಗಿದ್ದರೆ, ಸರ್ಕಾರವು ಅಂಥ ದುರ್ವ್ಯವಹಾರಕ್ಕೆ ಅಥವಾ ದುರಾಡಳಿತಕ್ಕೆ ಹೊಣೆಯಾಗಿರುವ ವ್ಯಕ್ತಿಗಳನ್ನು ಗುರುತಿಸುವ ಮತ್ತು ಅವರ ಮೇಲೆ ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ದಂಡನೆಯನ್ನು ವಿಧಿಸಲು ಸ್ವತಂತ್ರವಾಗಿರತಕ್ಕದ್ದು.

**60. ತೊಂದರೆಗಳ ನಿವಾರಣೆಗೆ ಅಧಿಕಾರ.–** (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಅಥವಾ ಆದೇಶದ ಮೂಲಕ ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಐದು ವರ್ಷಗಳು ಮುಕ್ತಾಯವಾದ ತರುವಾಯ ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಅಧಿಸೂಚನೆ ಅಥವಾ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

**61. ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ.–** (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ಹೊರಡಿಸಲಾದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಉಭಯ ಸದನಗಳು ಒಪ್ಪಿದರೆ ತದನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ದತಿಯು ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವನ್ನು ಉಂಟುಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಜಿ.ಕೆ.ಬೋರೇಗೌಡ
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) (೫೦೦ ಪ್ರತಿಗಳು)

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ



| | | |
|---|---|---|
| ಭಾಗ - IV-A | ಬೆಂಗಳೂರು, ಸೋಮವಾರ, ಮಾರ್ಚ್ ೨೫, ೨೦೧೩ (ಚೈತ್ರ ೪, ಶಕ ವರ್ಷ ೧೯೩೪) | ನಂ.೬೪೦ |
| Part - IV-A | Bangalore, Monday, March 25, 2013 (Chaithra 4, Shaka Varsha 1934) | No. 640 |



ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಂವ್ಯಶಾಇ 26 ಶಾಸನ 2013, ಬೆಂಗಳೂರು, ದಿನಾಂಕ: 25.03.2013

ಶ್ರೀನಿವಾಸ ವಿಶ್ವವಿದ್ಯಾಲಯ ವಿಧೇಯಕ, 2013– ಇದಕ್ಕೆ 2013ರ ಮಾರ್ಚ್ ತಿಂಗಳ ಇಪ್ಪತ್ತೆರಡನೇ ದಿನಾಂಕದಂದು ಘನತೆವೆತ್ತ ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2013ರ ಕರ್ನಾಟಕ ಅಧಿನಿಯಮ ಸಂಖ್ಯೆ: 42 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2013 ರ ಕರ್ನಾಟಕ ಅಧಿನಿಯಮ ಸಂಖ್ಯೆ: 42**

(2013ರ ಮಾರ್ಚ್ ಮಾಹೆಯ ಇಪ್ಪತ್ತೈದನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಶ್ರೀನಿವಾಸ ವಿಶ್ವವಿದ್ಯಾಲಯ ಅಧಿನಿಯಮ, 2013

(2013ರ ಮಾರ್ಚ್ ಮಾಹೆಯ ಇಪ್ಪತ್ತೆರಡನೇ ದಿನಾಂಕದಂದು ರಾಜ್ಯಪಾಲರ ಅನುಮತಿಯನ್ನು ಪಡೆಯಲಾಗಿದೆ)

ಸಾಮಾನ್ಯ, ತಾಂತ್ರಿಕ, ಆರೋಗ್ಯ, ವ್ಯವಸ್ಥಾಪನೆ, ಜೀವ ವಿಜ್ಞಾನ ಮತ್ತು ತತ್ಸಂಬಂಧಿ ವಲಯಗಳಲ್ಲಿ ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಉತ್ತೇಜಿಸಲು ಮತ್ತು ಕೈಗೊಳ್ಳಲು ಎ. ಶಾಮರಾವ್ ಪ್ರತಿಷ್ಠಾನ (ನೋಂ.) ಮಂಗಳೂರು ಇವರ ಮೂಲಕ ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದಕ್ಕಾಗಿ ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಸಾಮಾನ್ಯ, ತಾಂತ್ರಿಕ, ಆರೋಗ್ಯ, ವ್ಯವಸ್ಥಾಪನೆ, ಜೀವ ವಿಜ್ಞಾನಗಳು ಮತ್ತು ತತ್ಸಂಬಂಧಿ ವಲಯಗಳಲ್ಲಿ ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಉತ್ತೇಜಿಸಲು ಮತ್ತು ಕೈಗೊಳ್ಳಲು ಎ. ಶಾಮರಾವ್ ಪ್ರತಿಷ್ಠಾನ (ನೋಂ.) ಮಂಗಳೂರು ಇವರ ಮೂಲಕ ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ನಾಲ್ಕನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:–

### ಅಧ್ಯಾಯ – I

### ಪ್ರಾರಂಭಿಕ

1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.– (1) ಈ ಅಧಿನಿಯಮವನ್ನು ಶ್ರೀನಿವಾಸ ವಿಶ್ವವಿದ್ಯಾಲಯ ಅಧಿನಿಯಮ, 2013 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. ಪರಿಭಾಷೆಗಳು.**- ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) "ಶೈಕ್ಷಣಿಕ ಪರಿಷತ್ತು (ಅಕೆಡೆಮಿಕ್ ಕೌನ್ಸಿಲ್)" ಎಂದರೆ, 25ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿಸಲಾದ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು;

(ಬಿ) "ಕಾರ್ಯಸೂಚಿ ವಿಷಯಗಳು", ಎಂದರೆ, ಪರಿನಿಯಮಗಳಲ್ಲಿ ಹೆಸರಿಸಬಹುದಾದ ಮತ್ತು ಒಂದು ಸಭೆಯಲ್ಲಿ ಆ ವಿಷಯಗಳನ್ನು ಮತ್ತು ಕಲಾಪಗಳನ್ನು ಅನುಮೋದಿಸಬಹುದೆಂದು ತಮ್ಮ ಸಮ್ಮತಿ ಸೂಚಿಸಿ ಕುಲಾಧಿಪತಿಯವರು ಮುಂಚಿತವಾಗಿಯೇ ಲಿಖಿತ ಅನುಮೋದನೆಯನ್ನು ಕೊಟ್ಟಿದ್ದಾಗ ಮಾತ್ರವೇ ಸಂದರ್ಭಾನುಸಾರ ಪ್ರಬಂಧಕರ ಮಂಡಳಿ ಅಥವಾ ವ್ಯವಸ್ಥಾಪನಾ ಮಂಡಳಿ ಅಥವಾ ಯಾವುದೇ ಸಮಿತಿಯವರು ಕಾರ್ಯಸೂಚಿಯಲ್ಲಿ ಸೇರಿಸಬಹುದಾದ ಅಥವಾ ಸಭೆಯಲ್ಲಿ ಚರ್ಚೆಗೆ ತೆಗೆದುಕೊಂಡು ನಿರ್ಣಯವನ್ನು ಕೊಡಬಹುದಾದ ಎಲ್ಲಾ ವಿಷಯಗಳು ಮತ್ತು ಕಲಾಪಗಳು;

(ಸಿ) "ಪ್ರಬಂಧಕರ ಮಂಡಳಿ" ಎಂದರೆ, 23ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಪ್ರಬಂಧಕರ ಮಂಡಳಿ;

(ಡಿ) "ವ್ಯವಸ್ಥಾಪನಾ ಮಂಡಳಿ" ಎಂದರೆ 24ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದಂತೆ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿ ;

(ಇ) "ಕುಲಾಧಿಪತಿ", "ಕುಲಪತಿ", "ಸಹಕುಲಪತಿ" ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ ಮತ್ತು ಸಹಕುಲಪತಿ;

(ಎಫ್) "ಕ್ಯಾಂಪಸ್" ಎಂದರೆ, ಅದು ಎಲ್ಲಾದರೂ ಇರಲಿ ವಿಶ್ವವಿದ್ಯಾಲಯವು ಸ್ಥಾಪಿಸಿದ, ನಿರ್ವಹಿಸುವ ಒಂದು ಕ್ಯಾಂಪಸ್;

(ಜಿ) "ಸಮಿತಿಗಳು" ಎಂದರೆ, ಈ ಅಧಿನಿಯಮದಡಿಯಲ್ಲಿ ರೂಪಿಸಲಾದ ಸಮಿತಿಗಳು ಅಥವಾ ಸಂದರ್ಭಾನುಸಾರವಾಗಿ ವಿಶ್ವವಿದ್ಯಾಲಯದ ವಿವಿಧ ಕಾರ್ಯಕರ್ತರು ರಚಿಸಿರುವ ಸಮಿತಿಗಳು ಮತ್ತು ಅದರಲ್ಲಿ ಶೋಧನಾ ಸಮಿತಿ, ನಾಮನಿರ್ದೇಶನ ಸಮಿತಿ, ಹಣಕಾಸು ಸಮಿತಿ, ಹಣಕಾಸು ಪರಿಷತ್ತು ಮತ್ತು ಅಂಥ ಇತರ ಸಮಿತಿಗಳು ಒಳಗೊಳ್ಳುತ್ತವೆ;

(ಎಚ್) "ಘಟಕ ಕಾಲೇಜು" ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುತ್ತಿರುವ ಒಂದು ಕಾಲೇಜು ಅಥವಾ ಸಂಸ್ಥೆ;

(ಐ) "ಹಣಕಾಸು ಸಮಿತಿ" ಎಂದರೆ, 27ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಹಣಕಾಸು ಸಮಿತಿ;

(ಜೆ) "ಪ್ರಾಯೋಜಕ ನ್ಯಾಸ" ಎಂದರೆ ಭಾರತೀಯ ನ್ಯಾಸ ಅಧಿನಿಯಮ, 1882ರ ಅಡಿಯಲ್ಲಿ ನೋಂದಣಿಯಾದ ಎ. ಶಾಮರಾವ್ ಪ್ರತಿಷ್ಠಾನ (ನೋಂ) ಮಂಗಳೂರು;

(ಕೆ) "ಸರ್ಕಾರ" ಎಂದರೆ, ಕರ್ನಾಟಕ ಸರ್ಕಾರ;

(ಎಲ್) "ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳು" ಎಂದರೆ, ವಿಶ್ವವಿದ್ಯಾಲಯ ಅನುದಾನ ಆಯೋಗ, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು, ಭಾರತೀಯ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಪರಿಷತ್ತು, ಭಾರತೀಯ ಔಷಧ ವಿಜ್ಞಾನ ಪರಿಷತ್ತು, ಭಾರತೀಯ ಕೃಷಿ ಸಂಶೋಧನಾ ಪರಿಷತ್ತು, ರಾಷ್ಟ್ರೀಯ ಮೌಲ್ಯಮಾಪನ ಮತ್ತು ಅಧಿಮಾನ್ಯತಾ ಪರಿಷತ್ತು, ರಾಷ್ಟ್ರೀಯ ಬೋಧಕ ಶಿಕ್ಷಣ ಪರಿಷತ್ತು, ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಪರಿಷತ್ತು ಮುಂತಾದ, ಉನ್ನತ ಶಿಕ್ಷಣದಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುವಂತೆ ನೋಡಿಕೊಳ್ಳುವುದಕ್ಕಾಗಿ ಗುಣಮಟ್ಟಗಳು ಮತ್ತು ಷರತ್ತುಗಳನ್ನು ವಿಧಿಸುವುದಕ್ಕಾಗಿ, ಕೇಂದ್ರ ಸರ್ಕಾರವು ಸ್ಥಾಪಿಸಿರುವ ಒಂದು ಸಂಸ್ಥೆ ಮತ್ತು ಇದರಲ್ಲಿ ಸರ್ಕಾರವೂ ಸೇರಿರುತ್ತದೆ;

(ಎಂ) "ನಿಯಮಿಸಲಾದುದು" ಎಂದರೆ, ಈ ಅಧಿನಿಯಮದಡಿಯಲ್ಲಿ ಸರ್ಕಾರವು ರಚಿಸಲಾದ ನಿಯಮಗಳ ಮೂಲಕ ನಿಯಮಿಸಲಾದುದು;

(ಎನ್) "ಒಂದು ಘಟಕ ಕಾಲೇಜಿಗೆ ಸಂಬಂಧಪಟ್ಟಂತೆ ಪ್ರಾಂಶುಪಾಲರು" ಎಂದರೆ, ಘಟಕ ಕಾಲೇಜಿನ ಮುಖ್ಯಸ್ಥರು ಮತ್ತು ಪ್ರಾಂಶುಪಾಲರು ಇಲ್ಲದಿದ್ದಲ್ಲಿ ಅಥವಾ ನೇಮಕವಾದ ಪ್ರಾಂಶುಪಾಲರ ಗೈರುಹಾಜರಿಯಲ್ಲಿ, ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ತಾತ್ಕಾಲಿಕವಾಗಿ ನೇಮಕಗೊಂಡಿರುವ ಉಪಪ್ರಾಂಶುಪಾಲರು ಅಥವಾ ಯಾವುದೇ ಇತರ ವ್ಯಕ್ತಿಯೂ ಇದರಲ್ಲಿ ಒಳಗೊಳ್ಳುತ್ತಾರೆ;

(ಒ) "ಕುಲಸಚಿವರು" ಎಂದರೆ, ವಿಶ್ವವಿದ್ಯಾಲಯದ ಕುಲಸಚಿವರು;

(ಪಿ) "ಪ್ರಾದೇಶಿಕ ಕೇಂದ್ರ" ಎಂದರೆ, ಯಾವುದೇ ಪ್ರದೇಶದಲ್ಲಿನ ಅಧ್ಯಯನ ಕೇಂದ್ರಗಳ ಕಾರ್ಯವನ್ನು ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ಮಾಡುವ ಉದ್ದೇಶಕ್ಕಾಗಿ ಮತ್ತು ಅಂಥ ಕೇಂದ್ರಕ್ಕೆ ಕಾರ್ಯಕಾರಿ ಪರಿಷತ್ತು ವಹಿಸಿಕೊಡಬಹುದಾದ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸುವುದಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಅಥವಾ ನಿರ್ವಹಿಸಿಕೊಂಡುಬರುವ ಒಂದು ಕೇಂದ್ರ;

(ಕ್ಯೂ) ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ "ಪ್ರಾಯೋಜಕ ಪ್ರಾಧಿಕಾರ" ಅಥವಾ "ಪ್ರಾಯೋಜಕ ಸಂಸ್ಥೆ" ಎಂದರೆ ಪ್ರಾಯೋಜಕ ನ್ಯಾಸ;

(ಆರ್) "ರಾಜ್ಯ" ಎಂದರೆ, ಕರ್ನಾಟಕ ರಾಜ್ಯ;

(ಎಸ್) "ಪರಿನಿಯಮಗಳು" ಮತ್ತು "ವಿನಿಯಮಗಳು" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಅನುಕ್ರಮವಾಗಿ ವಿಶ್ವವಿದ್ಯಾಲಯದ ಪರಿನಿಯಮಗಳು ಮತ್ತು ವಿನಿಯಮಗಳು;

(ಟಿ) "ಅಧ್ಯಯನ ಕೇಂದ್ರ" ಎಂದರೆ, ವಿದ್ಯಾರ್ಥಿಗಳಿಗೆ ಅಗತ್ಯವಾದ ಬುದ್ಧಿವಾದ, ಸಲಹೆಗಳನ್ನು ನೀಡುವ ಅಥವಾ ಇತರ ಯಾವುದೇ ನೆರವನ್ನು ನೀಡುವ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಮತ್ತು ನಿರ್ವಹಿಸಿಕೊಂಡುಬಂದ ಒಂದು ಕೇಂದ್ರ;

(ಯು) "ಅಧ್ಯಾಪಕರು" ಎಂದರೆ, ಒಬ್ಬ ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಒಂದು ಘಟಕ ಕಾಲೇಜಿನಲ್ಲಿ ಬೋಧಿಸುವುದಕ್ಕೆ ಅಥವಾ ಸಂಶೋಧನೆ ನಡೆಸುವುದಕ್ಕೆ ಅಥವಾ ಸಂಶೋಧನೆಗೆ ಮಾರ್ಗದರ್ಶನ ನೀಡುವುದಕ್ಕೆ ನೇಮಕವಾದ ಅಂಥ ಇತರ ವ್ಯಕ್ತಿ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗವು ನಿಯಮಿಸಿದ ಗುಣಮಟ್ಟಗಳಿಗೆ ಅನುಸಾರವಾಗಿ ಇರುವ ಘಟಕ ಕಾಲೇಜಿನ ಪ್ರಾಂಶುಪಾಲರು ಇದರಲ್ಲಿ ಒಳಗೊಳ್ಳುತ್ತಾರೆ;

(ವಿ) "ವಿಶ್ವವಿದ್ಯಾಲಯ ಅನುದಾನಗಳ ಆಯೋಗ" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) 4ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ಆಯೋಗ;

(ಡಬ್ಲ್ಯೂ) "ವಿಶ್ವವಿದ್ಯಾಲಯ" ಎಂದರೆ, ಈ ಅಧಿನಿಯಮದಡಿಯಲ್ಲಿ ಸ್ಥಾಪಿಸಿ ನಿಗಮಿತಗೊಳಿಸಲಾದ ಶ್ರೀನಿವಾಸ ವಿಶ್ವವಿದ್ಯಾಲಯ;

(ಎಕ್ಸ್) "ಸಂದರ್ಶಕರು" ಎಂದರೆ, 13ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ವಿಶ್ವವಿದ್ಯಾಲಯದ ಸಂದರ್ಶಕರು.

## ಅಧ್ಯಾಯ- II

## ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

**3. ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ.-** (1) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಹಕ್ಕನ್ನು ಪ್ರಾಯೋಜಕ ನ್ಯಾಸವು ಹೊಂದಿರತಕ್ಕದ್ದು.

(2) ಪ್ರಾಯೋಜಕ ನ್ಯಾಸವು ರಾಜ್ಯ ಸರ್ಕಾರಕ್ಕೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವವನ್ನು ಸಲ್ಲಿಸತಕ್ಕದ್ದು.

(3) ಪ್ರಸ್ತಾವವು ಈ ಮುಂದಿನ ವಿವರಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಪ್ರಾಯೋಜಕ ನ್ಯಾಸದ ವಿವರಗಳೊಂದಿಗೆ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು;

(ii) ವಿಶ್ವವಿದ್ಯಾಲಯದ ವ್ಯಾಪ್ತಿ ಮತ್ತು ಸ್ಥಾನಮಾನ ಹಾಗೂ ಭೂಮಿಯ ಲಭ್ಯತೆ;

(iii) ಪ್ರಾರಂಭದ ದಿನಾಂಕದಿಂದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳಬೇಕೆಂದಿರುವ ಅಧ್ಯಯನ ಮತ್ತು ಸಂಶೋಧನಾ ಕಾರ್ಯಕ್ರಮಗಳ ಸ್ವರೂಪ ಮತ್ತು ಬಗೆಗಳು;

(iv) ಪ್ರಾರಂಭಿಸಬೇಕೆಂದು ಪ್ರಸ್ತಾಪಿಸಿರುವ ವ್ಯಾಸಂಗ ವಿಭಾಗಗಳು (ಫ್ಯಾಕಲ್ಟಿಗಳು), ಅಧ್ಯಯನ ಕ್ರಮಗಳು ಮತ್ತು ಸಂಶೋಧನೆಗಳ ಸ್ವರೂಪ;

(v) ಕಟ್ಟಡಗಳು, ಸಲಕರಣೆಗಳು ಮತ್ತು ರಚನಾ ಸೌಕರ್ಯಗಳನ್ನು ಒದಗಿಸುವಂಥ ಕ್ಯಾಂಪಸ್ ಅಭಿವೃದ್ಧಿ;

(vi) ಪ್ರಾರಂಭದ ದಿನಾಂಕದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಗಾಗಿ ಬಂಡವಾಳ ವೆಚ್ಚದ ಹಂತಗಳು;

(vii) ಬಾಬುವಾರು ಆವರ್ತಕ ವೆಚ್ಚ, ಆರ್ಥಿಕ ಮೂಲಗಳು ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ತಗಲುವ ಅಂದಾಜು ವೆಚ್ಚ;

(viii) ಸಂಪನ್ಮೂಲ ಸಂಗ್ರಹಣೆಗಾಗಿ ಯೋಜನೆ ಮತ್ತು ಅದಕ್ಕೆ ಬಂಡವಾಳದಿಂದ ತಗಲುವ ವೆಚ್ಚ ಹಾಗೂ ಪ್ರತಿಯೊಂದು ಮೂಲಕ್ಕೂ ಮರು ಸಂದಾಯ ಮಾಡುವ ರೀತಿ;

(ix) ವಿದ್ಯಾರ್ಥಿಗಳಿಂದ ಶುಲ್ಕ ವಸೂಲು ಮಾಡಿ ಆಂತರಿಕವಾಗಿ ನಿಧಿ ಸಂಗ್ರಹಿಸುವ ಯೋಜನೆ, ಸಲಹಾ ಸೇವೆ ಮತ್ತು ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಿಗೆ ಸಂಬಂಧಿಸಿದ ಇತರ ಚಟುವಟಿಕೆಗಳಿಂದ ನಿರೀಕ್ಷಿತ ವರಮಾನಗಳು ಮತ್ತು ಇತರ ನಿರೀಕ್ಷಿತ ವರಮಾನಗಳು;

(x) ಘಟಕವೊಂದಕ್ಕೆ ತಗಲುವ ವೆಚ್ಚದ ವಿವರಗಳು, ಆರ್ಥಿಕವಾಗಿ ದುರ್ಬಲವಾದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕ, ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿ ವೇತನದಲ್ಲಿ ನೀಡುವ ರಿಯಾಯಿತಿ ಅಥವಾ ವಿನಾಯತಿಯ ಪರಿಮಿತಿಯ ವಿವರಗಳನ್ನು ಮತ್ತು ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳಿಗೆ ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳು ಪ್ರಾಯೋಜಿಸಿದ ವಿದ್ಯಾರ್ಥಿಗಳಿಗೆ

ಮತ್ತು ಭಾರತವನ್ನುಳಿದು ಇತರ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ವಿಧಿಸತಕ್ಕ ಶುಲ್ಕದ ದರಗಳು ಬೇರೆ ಬೇರೆ ಇದ್ದಲ್ಲಿ ಅವುಗಳನ್ನು ಸೂಚಿಸುವ ಶುಲ್ಕ ರಚನೆಯ ವಿವರಗಳು;

(xi) ಸಂಬಂಧಪಟ್ಟ ವಿದ್ಯಾ ವಿಭಾಗದಲ್ಲಿ ಎಷ್ಟು ವರ್ಷಗಳ ಅನುಭವ ಮತ್ತು ಪರಿಣಿತಿಯನ್ನು ಪ್ರಾಯೋಜಕ ನ್ಯಾಸವು ದೊರಕಿಸಿಕೊಡಲಿದೆ ಹಾಗೂ ಅದರ ಹಣಕಾಸಿನ ಸಂಪನ್ಮೂಲಗಳು;

(xii) ವಿಶ್ವವಿದ್ಯಾಲಯದಲ್ಲಿರುವ ಅಧ್ಯಯನ ಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕಾಗಿ ಇರುವ ವ್ಯವಸ್ಥೆ;

(xiii) ವಿಶ್ವವಿದ್ಯಾಲಯವು ಸ್ಥಾಪನೆಯಾಗುವುದಕ್ಕೆ ಮೊದಲು ನೆರವೇರಿಸಬೇಕೆಂದು ರಾಜ್ಯ ಸರ್ಕಾರವು ಅಗತ್ಯಪಡಿಸಬಹುದಾದ ಅಂಥ ಇತರ ಷರತ್ತುಗಳ ನೆರವೇರಿಕೆಯ ಹಂತ.

(4) ಪ್ರಾಯೋಜಕ ನ್ಯಾಸದಿಂದ ಸ್ವೀಕರಿಸಿದ ಪ್ರಸ್ತಾವಗಳನ್ನು ಪರೀಕ್ಷಿಸಲು ರಾಜ್ಯ ಸರ್ಕಾರವು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಪದನಿಮಿತ್ತ ಸದಸ್ಯರಾದ ಮೂರು ಸದಸ್ಯರುಗಳನ್ನು ಒಳಗೊಂಡ ಒಂದು ಶೋಧನಾ ಸಮಿತಿಯನ್ನು ರಚಿಸತಕ್ಕದ್ದು ಮತ್ತು ಅದು ವಿಶ್ವವಿದ್ಯಾಲಯದ ಸ್ಥಾಪನೆಗೆ ರಾಜ್ಯ ಸರ್ಕಾರಕ್ಕೆ ಶಿಫಾರಸ್ಸನ್ನು ಮಾಡತಕ್ಕದ್ದು.

**4. ವಿಶ್ವವಿದ್ಯಾಲಯದ ಸ್ಥಾಪನೆ.–** (1) ರಾಜ್ಯ ಸರ್ಕಾರವು ಶೋಧನಾ ಸಮಿತಿಯು ಮಾಡಿದ ಶಿಫಾರಸ್ಸುಗಳನ್ನು ಪರಿಶೀಲಿಸಿದ ತರುವಾಯ ಮತ್ತು ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ,–

(i) ನ್ಯಾಸವು ಸಾಕಷ್ಟು ಮೂಲ ಸೌಕರ್ಯದೊಂದಿಗೆ ವಿಶ್ವವಿದ್ಯಾಲಯವೊಂದನ್ನು ನಡೆಸಲು ಸಮರ್ಥವಾಗಿದೆ ಎಂದು ಅದು ಮನಗಂಡರೆ;

(ii) ಪ್ರದೇಶಕ್ಕನುಸಾರವಾಗಿ ಕೆಳಗೆ ನಿರ್ದಿಷ್ಟ ಪಡಿಸಿದ ವ್ಯಾಪ್ತಿಗೆ ಭೂಮಿಯ ಒಡೆತನವನ್ನು ಹೊಂದಿರತಕ್ಕದ್ದು, ಎಂದರೆ:–

(ಎ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯೊಳಗಿದ್ದರೆ ಇಪ್ಪತ್ತೈದು ಎಕರೆಗಳು;

(ಬಿ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯಿಂದ ಹೊರಗೆ ಇದ್ದು, ಆದರೆ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಪ್ರದೇಶದ ಒಳಗೆ ಇದ್ದರೆ ನಲವತ್ತು ಎಕರೆಗಳು;

(ಸಿ) ಭೂಮಿಯು (ಎ) ಮತ್ತು (ಬಿ) ಖಂಡಗಳಲ್ಲಿ ನಿರ್ದಿಷ್ಟಪಡಿಸಿದ ಸ್ಥಳಗಳನ್ನು ಹೊರತುಪಡಿಸಿದ್ದರೆ ಅರವತ್ತು ಎಕರೆಗಳಿಗಿಂತ ಕಡಿಮೆ ಇರತಕ್ಕದ್ದಲ್ಲ.

ಮೇಲೆ ನಿರ್ದಿಷ್ಟಪಡಿಸಿದ ಭೂಮಿಯು ಏಕ ಘಟಕ (ಸಿಂಗಲ್ ಬ್ಲಾಕ್) ದಲ್ಲಿರತಕ್ಕದ್ದು ಮತ್ತು ಇದು ಸಂಬಂಧಪಟ್ಟ ನ್ಯಾಸ/ಪ್ರತಿಷ್ಠಾನ/ಸಂಸ್ಥೆ/ವಿಶ್ವವಿದ್ಯಾಲಯದ ಹೆಸರಿನಲ್ಲಿರತಕ್ಕದ್ದು. 3ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ಅಗತ್ಯಪಡಿಸಲಾದಂತೆ ಒದಗಿಸಿದ ವಿವರಗಳ ಆಧಾರದ ಮೇಲೆ ಸರ್ಕಾರವು 47ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಬೇಕೆಂದು ನ್ಯಾಸಕ್ಕೆ ನಿರ್ದೇಶನ ನೀಡಬಹುದು.

(2) ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಸ್ಥಾಪನೆಯ ತರುವಾಯ, ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, "ಶ್ರೀನಿವಾಸ ವಿಶ್ವವಿದ್ಯಾಲಯ" ಎಂಬ ಹೆಸರಿನ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ರಾಜ್ಯದಲ್ಲಿ ಸ್ಥಾಪಿಸುವುದಕ್ಕೆ ಮಂಜೂರಾತಿಯನ್ನು ನೀಡಬಹುದು.

(3) ವಿಶ್ವವಿದ್ಯಾಲಯದ ಕೇಂದ್ರ ಕಾರ್ಯಸ್ಥಾನವು ಮಂಗಳೂರಿನಲ್ಲಿ ಇರತಕ್ಕದ್ದು. ವಿಶ್ವವಿದ್ಯಾಲಯವು ತನ್ನ ಕ್ಯಾಂಪಸ್ಸುಗಳನ್ನು ಅಥವಾ ಪ್ರಾದೇಶಿಕ ಕೇಂದ್ರಗಳನ್ನು, ಅಧ್ಯಯನ ಕೇಂದ್ರಗಳನ್ನು ಕರ್ನಾಟಕದ ಯಾವುದೇ ಭಾಗದಲ್ಲಿ ಹೊಂದಿರತಕ್ಕದ್ದು ಮತ್ತು ಆ ಬಗ್ಗೆ ರಾಜ್ಯ ಸರ್ಕಾರದ ಪೂರ್ವಾನುಮತಿಯನ್ನು ಪಡೆದುಕೊಳ್ಳುವುದಕ್ಕೊಳಪಟ್ಟು ಹಾಗೂ ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗನುಸಾರವಾಗಿ ಹೊಂದಿರತಕ್ಕದ್ದು.

(4) ಮೊದಲ ಕುಲಾಧಿಪತಿಯವರು, ಮೊದಲ ಕುಲಪತಿಯವರು, ಪ್ರಬಂಧಕ ಮಂಡಳಿಯ ಮೊದಲ ಸದಸ್ಯರುಗಳು, ವ್ಯವಸ್ಥಾಪನಾ ಮಂಡಳಿಯ ಹಾಗೂ ಶೈಕ್ಷಣಿಕ ಪರಿಷತ್ತಿನ ಮೊದಲ ಸದಸ್ಯರುಗಳು ಮತ್ತು ಇನ್ನು ಮುಂದೆ, ಅಂಥ ಅಧಿಕಾರಿಗಳು ಅಥವಾ ಸದಸ್ಯರುಗಳಾಗಬಹುದಾದಂಥ ಎಲ್ಲಾ ವ್ಯಕ್ತಿಗಳು, ಅಂಥ ಪದ ಅಥವಾ ಸದಸ್ಯತ್ವವನ್ನು ಹೊಂದಿರುವುದು ಮುಂದುವರೆಯುವವರೆಗೆ, ಒಂದು ನಿಗಮಿತ ನಿಕಾಯವನ್ನು ರಚಿಸತಕ್ಕದ್ದು. ಮತ್ತು ಅದು ವಿಶ್ವವಿದ್ಯಾಲಯದ ಹೆಸರಿನಲ್ಲಿ ದಾವೆ ಹೂಡಬಹುದು ಮತ್ತು ದಾವೆಗೊಳಗಾಗಬಹುದು.

(5) (2)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯವು ಸ್ಥಾಪನೆಗೆ ಮಂಜೂರಾತಿಯಾದ ಮೇಲೆ, ವಿಶ್ವವಿದ್ಯಾಲಯದ ಉದ್ದೇಶಕ್ಕಾಗಿ, ನ್ಯಾಸವು ಆರ್ಜಿಸಿದ, ಸೃಜಿಸಿದ, ಏರ್ಪಾಟು ಮಾಡಿಕೊಂಡ ಅಥವಾ ಕಟ್ಟಲ್ಪಟ್ಟ ಭೂಮಿ ಮತ್ತು ಇತರ ಸ್ಥಿರ ಮತ್ತು ಚರ ಸ್ವತ್ತು, ವಿಶ್ವವಿದ್ಯಾಲಯದಲ್ಲಿ ನಿಹಿತವಾಗಿರತಕ್ಕದ್ದು.

(6) ವಿಶ್ವವಿದ್ಯಾಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದ ಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂಥ ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

(7) ವಿಶ್ವವಿದ್ಯಾಲಯದಲ್ಲಿನ ಭೂಮಿ. ಕಟ್ಟಡ ಮತ್ತು ಇತರ ಸ್ವತ್ತುಗಳನ್ನು ವಿಶ್ವವಿದ್ಯಾಲಯದ ಉದ್ದೇಶಗಳಿಗೆ ಆನುಷಂಗಿಕವಾಗಿರುವುದನ್ನು ಹೊರತುಪಡಿಸಿ ಇತರ ಯಾವುದೇ ಉದ್ದೇಶಕ್ಕಾಗಿ ಬಳಸತಕ್ಕದ್ದಲ್ಲ.

**5. ಅನುದಾನಗಳು ಮತ್ತು ಹಣಕಾಸು ನೆರವು.–** ವಿಶ್ವವಿದ್ಯಾಲಯವು ಸ್ವಂತ ಧನಮೂಲ ಉಳ್ಳದ್ದಾಗಿರತಕ್ಕದ್ದು ಮತ್ತು ರಾಜ್ಯದಿಂದ ಅಥವಾ ರಾಜ್ಯದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಇತರ ಸಂಸ್ಥೆ ಅಥವಾ ನಿಗಮದಿಂದ ಯಾವುದೇ ನಿರ್ವಹಣಾ ಸಹಾಯ ಅನುದಾನ ಅಥವಾ ಯಾವುದೇ ಹಣಕಾಸು ನೆರವನ್ನು ಹಕ್ಕಿನಿಂದ ಕೇಳತಕ್ಕದ್ದಲ್ಲ ಅಥವಾ ಅದನ್ನು ಪಡೆಯಲು ಹಕ್ಕನ್ನು ಹೊಂದಿರತಕ್ಕದ್ದಲ್ಲ:

ಪರಂತು, ರಾಜ್ಯವು,–

(ಎ) ಇತರ ರಾಜ್ಯ ಸರ್ಕಾರದ ಸಂಘಟನೆಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿರುವಂಥದ್ದೇ ಸಂಶೋಧನೆ, ಅಭಿವೃದ್ಧಿ ಮತ್ತಿತರ ಚಟುವಟಿಕೆಗಳಿಗಾಗಿ; ಅಥವಾ

(ಬಿ) ರಾಜ್ಯ ಸರ್ಕಾರದಿಂದ ನೆರವನ್ನು ಪಡೆಯುವ ಯಾವುದೇ ನಿರ್ದಿಷ್ಟ ಸಂಶೋಧನೆ ಅಥವಾ ಕಾರ್ಯಕ್ರಮಗಳಿಗಾಗಿ; ಮತ್ತು

(ಸಿ) ರಾಜ್ಯ ಕಾರ್ಯನೀತಿಯ ಬದಲಾವಣೆಗೆ ಒಳಪಟ್ಟು ಅಥವಾ ಅನ್ಯಥಾ ಇದೇ ಬಗೆಯ ವಿಶ್ವವಿದ್ಯಾಲಯಗಳಿಗೆ ಅವಕಾಶವನ್ನು ಕಲ್ಪಿಸುವುದಕ್ಕೆ ಅಥವಾ ಅವುಗಳ ಪ್ರಯೋಜನಕ್ಕಾಗಿ,

– ಅನುದಾನದ ಮೂಲಕ ಅಥವಾ ಅನ್ಯಥಾ ಹಣಕಾಸು ಬೆಂಬಲವನ್ನು ಒದಗಿಸಬಹುದು:

ಮತ್ತು ಪರಂತು, ವಿಶ್ವವಿದ್ಯಾಲಯವು, ಯಾವುದೇ ಇತರ ಮೂಲದಿಂದ ಯಾವುದೇ ಆರ್ಥಿಕ ನೆರವನ್ನು ಸ್ವೀಕರಿಸಬಹುದು.

**6. ಘಟಕ ಕಾಲೇಜು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಅಥವಾ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದಕ್ಕೆ ಅಧಿಕಾರ.–** ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಐದು ವರ್ಷಗಳನ್ನು ಪೂರ್ಣಗೊಳಿಸಿದ ನಂತರ, ವಿಶ್ವವಿದ್ಯಾಲಯ ಅನುದಾನ ಆಯೋಗದ ಮತ್ತು ಇತರ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ಗುಣಮಟ್ಟಗಳಿಗೆ ಒಳಪಟ್ಟು, ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ, ವಿಶ್ವವಿದ್ಯಾಲಯವು, ರಾಜ್ಯದಲ್ಲಿ ತನಗೆ ಸೂಕ್ತವೆನಿಸುವಂಥ ಸ್ಥಳಗಳಲ್ಲಿ ಘಟಕ ಕಾಲೇಜುಗಳು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದಿರಬಹುದು.

**7. ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು.–** ವಿಶ್ವವಿದ್ಯಾಲಯವು, ತನ್ನ ಭವಿಷ್ಯದ್‌ದೃಷ್ಟಿ ಮತ್ತು ಧ್ಯೇಯೋದ್ದೇಶಗಳನ್ನು ಸಾಧಿಸಲು ಈ ಮುಂದಿನಂತೆ ವಿವಿಧ ಬಗೆಯ ಕಾರ್ಯತಂತ್ರಗಳನ್ನು ಕೈಗೊಳ್ಳಬಹುದು:–

(i) ತಾಂತ್ರಿಕತೆ, ಆರೋಗ್ಯ, ವ್ಯವಸ್ಥಾಪನೆ, ಜೀವ ವಿಜ್ಞಾನಗಳು ಮತ್ತು ಸಂಬಂಧಿತ ವಲಯಗಳಲ್ಲಿ ಸ್ನಾತಕೋತ್ತರ, ಡಾಕ್ಟೊರಲ್ ಮತ್ತು ಪೋಸ್ಟ್ ಡಾಕ್ಟೊರಲ್ ಕೋರ್ಸುಗಳಿಗೆ ಮುಂದುವರಿಯುವ ಮತ್ತು ಅವುಗಳನ್ನು ಒಳಗೊಳ್ಳುವ ವಿಶ್ವವಿದ್ಯಾಲಯ ಶಿಕ್ಷಣದಲ್ಲಿ ಪ್ರಗತಿಯನ್ನು ಮತ್ತು ಅನ್ವೇಷಣೆಯನ್ನು ಬೆಂಬಲಿಸುವುದು, ಪ್ರೋತ್ಸಾಹಿಸುವುದು ಮತ್ತು ಕೈಗೊಳ್ಳುವುದು ಹಾಗೂ ಈ ಕ್ಷೇತ್ರಗಳಲ್ಲಿ ಸಲಹೆಯನ್ನೂ ಒಳಗೊಂಡಂತೆ ಸಂಶೋಧನೆ, ಪ್ರಗತಿ ಮತ್ತು ಪ್ರಸಾರಕ್ಕೆ ಅವಕಾಶವನ್ನು ಕಲ್ಪಿಸುವುದು;

(ii) ವಿದ್ಯಾರ್ಥಿಗಳಿಗೆ, ಬೋಧಕ ವೃಂದದ (ಫ್ಯಾಕಲ್ಟಿ) ಸದಸ್ಯರಿಗೆ ಮತ್ತು ಇತರರಿಗೆ ನಿರ್ದಿಷ್ಟ ಶೈಕ್ಷಣಿಕ ಮತ್ತು ಸಂಶೋಧನಾ ಕಾರ್ಯಕ್ರಮಗಳನ್ನು, ತರಬೇತಿ ಕಾರ್ಯಕ್ರಮಗಳನ್ನು ಮತ್ತು ವಿನಿಮಯ ಕಾರ್ಯಕ್ರಮಗಳನ್ನು ಪರಿಕಲ್ಪಿಸಲು, ವಿನ್ಯಾಸಗೊಳಿಸಲು, ಅಭಿವೃದ್ಧಿಪಡಿಸಲು ಇತರ ಯಾವುದೇ ವಿಶ್ವವಿದ್ಯಾಲಯಗಳು, ಸಂಶೋಧನಾ ಸಂಸ್ಥೆಗಳು, ಲಾಭರಹಿತ ಸಂಸ್ಥೆಗಳು, ಕೈಗಾರಿಕಾ ಸಂಸ್ಥೆಗಳು, ವೃತ್ತಿಪರ ಸಂಸ್ಥೆಗಳು ಅಥವಾ ಇತರ ಸಂಸ್ಥೆಗಳೊಂದಿಗೆ ಸಹಯೋಗವನ್ನು ಹೊಂದುವುದು;

(iii) ರಾಜ್ಯ ಸರ್ಕಾರದ ಪೂರ್ವ ಅನುಮೋದನೆಯೊಡನೆ, ಯಾವುದೇ ಸಂಸ್ಥೆಯೊಂದಿಗೆ ಸಹಯೋಗ ಹೊಂದಿ ಸಂಶೋಧನೆಯನ್ನು ಮತ್ತು ಹೊಸತನವನ್ನು ಬೆಳಕಿಗೆ ತರುವುದು;

(iv) ತಾನು ಸೂಕ್ತವೆಂದು ಭಾವಿಸಬಹುದಾದಂತೆ, ಕಲಿಕೆಯ ಅಂಥ ಶಾಖೆಗಳಲ್ಲಿ ಬೋಧನಾ ಮತ್ತು ಸಂಶೋಧನಾ ಸೌಲಭ್ಯಗಳನ್ನು ಒದಗಿಸಿ ಜ್ಞಾನ ಪ್ರಸಾರ ಮಾಡುವುದು ಮತ್ತು ಅದನ್ನು ಮುಂದುವರೆಸುವುದು ಹಾಗೂ ವಿಶೇಷವಾಗಿ ತಾಂತ್ರಿಕ, ಆರೋಗ್ಯ, ವ್ಯವಸ್ಥಾಪನೆ, ಜೀವ ವಿಜ್ಞಾನಗಳು ಮತ್ತು ಸಂಬಂಧಿತ ಕೋರ್ಸುಗಳಲ್ಲಿ ಸಮಗ್ರ ವ್ಯಾಸಂಗ ವಿಷಯಗಳಿಗಾಗಿ ವಿಶೇಷ ಉಪಬಂಧ ಕಲ್ಪಿಸುವುದು ಮತ್ತು ವಿಶ್ವವಿದ್ಯಾಲಯದಲ್ಲಿ ಅಂತರವಿದ್ಯಾವಿಷಯಗಳ ಅಧ್ಯಯನ ಮತ್ತು ಸಂಶೋಧನೆಗೆ ಉತ್ತೇಜನ ನೀಡುವುದಕ್ಕಾಗಿ ಸೂಕ್ತ ಕ್ರಮ ಕೈಗೊಳ್ಳುವುದು;

(v) ಇಂಜಿನಿಯರಿಂಗ್ ಪರಿಹಾರಗಳನ್ನೊದಗಿಸುವ ಭವಿಷ್ಯದ ಸಮರ್ಥವಾದ ತಾಂತ್ರಿಕತೆಗಳ ಸಂಶೋಧನೆಯೊಂದಿಗೆ ಮತ್ತು ತಾಂತ್ರಿಕ ವ್ಯವಹಾರ ಮತ್ತು ಬೆಳೆಯುತ್ತಿರುವ ತಾಂತ್ರಿಕತೆಗೆ ಬೆಂಬಲದೊಂದಿಗೆ ಉನ್ನತ ತಾಂತ್ರಿಕ ಮತ್ತು ವೃತ್ತಿಪರ ಕೈಗಾರಿಕೆಗಳ ಬೇಡಿಕೆಗಳನ್ನು ಈಡೇರಿಸುವುದು;

(vi) ಉನ್ನತ ಕಲಿಕೆಗೆ ಪ್ರವೇಶಾವಕಾಶಗಳನ್ನು ಮತ್ತು ನ್ಯಾಯಸಮ್ಮತತೆಗೆ ಉತ್ತೇಜನ ನೀಡುವ ದೃಷ್ಟಿಯಿಂದ, ಕಲಿಕೆಯ ವಿಧಾನಗಳು ಮತ್ತು ಸ್ಥಳಗಳು, ವ್ಯಾಸಂಗ ಕ್ರಮಗಳ ಸಂಯೋಜನೆ, ದಾಖಲಾತಿಗಾಗಿ ಅರ್ಹತೆ, ಪ್ರವೇಶದ ವಯಸ್ಸು, ಪರೀಕ್ಷೆಯನ್ನು ನಡೆಸುವುದು ಮತ್ತು ಕಾರ್ಯಕ್ರಮಗಳ ನಿರ್ವಹಣೆಗೆ ಸಂಬಂಧಿಸಿದಂತೆ ನಮ್ಯವಾದ (ಫ್ಲೆಕ್ಸಿಬಲ್) ಮತ್ತು ಮುಕ್ತವಾದ, ವಿಶ್ವವಿದ್ಯಾಲಯ ಮಟ್ಟದ ಶಿಕ್ಷಣದ ಅನ್ವೇಷಣಾ ಪದ್ಧತಿಯನ್ನು ಅಳವಡಿಸುವುದು ಹಾಗೂ ಜ್ಞಾನದ ಹೊಸ ಕ್ಷೇತ್ರಗಳಲ್ಲಿ ಉತ್ಕೃಷ್ಟತೆಗೆ ಪ್ರೋತ್ಸಾಹಿಸುವುದು, ಶೈಕ್ಷಣಿಕ ಮತ್ತು ಸಮನ್ವಯ ಕಲಿಕೆ, ಇವೆರಡಕ್ಕೂ ಸಮನಾದ ಪ್ರಾಮುಖ್ಯತೆಯನ್ನು ನೀಡುವುದು;

(vii) ಗುಣಮಟ್ಟದ ಶಿಕ್ಷಣಕ್ಕಾಗಿ ಕೊಡುಗೆಯನ್ನು ನೀಡಲು ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಸಂಪನ್ಮೂಲ ಕೇಂದ್ರಗಳನ್ನು ಅಭಿವೃದ್ಧಿಪಡಿಸುವುದು;

(viii) ಕರ್ನಾಟಕದಲ್ಲಿ ವಿವಿಧ ಸ್ಥಳಗಳಲ್ಲಿ ಕ್ಯಾಂಪಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳು ಮತ್ತು ಸಂಯೋಜಿತ ಕಾಲೇಜುಗಳನ್ನು ಸ್ಥಾಪಿಸುವುದು ಮತ್ತು ತಾಂತ್ರಿಕತೆ, ವೃತ್ತಿಪರತೆ, ಸಾಮಾನ್ಯ ಶಿಕ್ಷಣ ಮತ್ತು ಸಮಾಜ ಮತ್ತು ಮಾನವ ಅಭಿವೃದ್ಧಿಯಲ್ಲಿ ಶೈಕ್ಷಣಿಕ ಬದಲಾವಣೆಗೆ ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಕೊಡುಗೆ ನೀಡುವುದು ಮತ್ತು ಜ್ಞಾನವನ್ನು ಅಭಿವೃದ್ಧಿಪಡಿಸುವುದು;

(ix) ಮೌಲ್ಯಮಾಪನದ ವಿವಿಧ ಆಧುನಿಕ ವಿಧಾನಗಳ ಮೂಲಕ ಮಾಡಿದ ಮೌಲ್ಯಮಾಪನಕ್ಕೆ ಅನುಸಾರವಾಗಿ ಶಿಕ್ಷಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದುದರ ಆಧಾರದ ಮೇಲೆ ನೀಡಲು ಪದವಿಗಳನ್ನು, ಡಿಪ್ಲೋಮೋಗಳನ್ನು, ಪ್ರಮಾಣಪತ್ರಗಳನ್ನು ಮತ್ತು ಯತೋಪತ್ರ ಪ್ರದಾನದಂಥ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(x) ಉಪನ್ಯಾಸ ಮಾಲಿಕೆಗಳು, ವಿಚಾರ ಸಂಕಿರಣಗಳು, ಸಮ್ಮೇಳನಗಳು, ಕಾರ್ಯಾಗಾರ ಶಿಕ್ಷಣ ಕಾರ್ಯಕ್ರಮಗಳು, ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳು, ಪ್ರಕಟಣೆಗಳು ಮತ್ತು ತರಬೇತಿ ಕಾರ್ಯಕ್ರಮಗಳು ಮತ್ತು ಕಾರ್ಯಸೂಚಿಗಳ ಮೂಲಕ ಜ್ಞಾನ ಪ್ರಸಾರ ಮಾಡುವುದು ಮತ್ತು ಶಿಕ್ಷಣ ಮತ್ತು ತತ್ಸಂಬಂಧಿತ ಅಭಿವೃದ್ಧಿ ಕ್ಷೇತ್ರಗಳ ವಿಷಯಗಳ ಬಗ್ಗೆ ಸಾರ್ವಜನಿಕ ಚರ್ಚೆಯನ್ನು ಏರ್ಪಡಿಸುವುದು;

(xi) ರಾಜ್ಯ ಸರ್ಕಾರದ ಪೂರ್ವ ಅನುಮತಿಯೊಂದಿಗೆ, ಉತ್ತಮ ಗುಣಮಟ್ಟದ ಇತರ ಯಾವುವೇ ವಿಶ್ವವಿದ್ಯಾಲಯಗಳೊಂದಿಗೆ ಸಹಭಾಗಿಗಳಾಗಿ ವಿಶ್ವವಿದ್ಯಾಲಯದ ಬೋಧಕ ವೃಂದ (ಫ್ಯಾಕಲ್ಟಿ) ಮತ್ತು ಸಂಶೋಧಕರ ಅಭಿವೃದ್ಧಿ ಮತ್ತು ತರಬೇತಿಗಾಗಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು;

(xii) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದಕ್ಕಾಗಿ ಮತ್ತು ಉತ್ತೇಜಿಸುವುದಕ್ಕಾಗಿ ಅವಶ್ಯಕವಾದ ಮತ್ತು ಯುಕ್ತವಾದ ಕ್ರಮಗಳನ್ನು ಕೈಗೊಳ್ಳುವುದು;

(xiii) ಭಾರತದಲ್ಲಿ ಶಿಕ್ಷಣ ಮತ್ತು ಇತರ ಅಭಿವೃದ್ಧಿ ವಲಯಗಳನ್ನು ವಿಸ್ತರಿಸುವುದಕ್ಕಾಗಿ ಸರ್ಕಾರವು ಅನುಮೋದಿಸಬಹುದಾದಂತೆ ಯಾವುವೇ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದು.

**8. ವಿಶ್ವವಿದ್ಯಾಲಯದ ಅಧಿಕಾರಗಳು.**– ವಿಶ್ವವಿದ್ಯಾಲಯವು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗೆ ಅನುಸಾರವಾಗಿ ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿರ್ಧರಿಸಬಹುದಾದಂತೆ ಕ್ಯಾಂಪಸ್ಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಕರ್ನಾಟಕದಲ್ಲಿ ಸ್ಥಾಪಿಸುವುದು ಮತ್ತು ನಿರ್ವಹಿಸುವುದು;

(ii) ವಿಶ್ವವಿದ್ಯಾಲಯದ ಉದ್ದೇಶವನ್ನು ಕಾರ್ಯರೂಪಕ್ಕೆ ತರುವಲ್ಲಿ ಅಗತ್ಯವಾಗಬಹುದಾದ ಅಥವಾ ಕಾರ್ಯಸಾಧ್ಯವಾಗಬಹುದಾದ ಎಲ್ಲಾ ಅಂಥ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು;

(iii) ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಮತ್ತು ಷರತ್ತುಗಳಿಗೊಳಪಟ್ಟು ಪದವಿಗಳು ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರದಾನಮಾಡುವುದು;

(iv) ಪರಿನಿಯಮಗಳನ್ವಯ ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿ ವೇತನಗಳು ಮತ್ತು ಬಹುಮಾನಗಳು, ಅವಾರ್ಡುಗಳು, ಪಾರಿತೋಷಕಗಳು ಇತ್ಯಾದಿಗಳನ್ನು ಸ್ಥಾಪಿಸುವುದು ಮತ್ತು ನೀಡುವುದು;

(v) ಪರಿನಿಯಮಗಳಲ್ಲಿ ಅಥವಾ ಸಂದರ್ಭಾನುಸಾರವಾಗಿ ನಿಯಮಗಳಲ್ಲಿ ನಿಗದಿಪಡಿಸಬಹುದಾದ ಅಂಥ ಶುಲ್ಕಗಳು, ಬಿಲ್ಲುಗಳು, ಖರೀದಿ ಪಟ್ಟಿಗಳನ್ನು ಕೇಳಿಪಡೆದುಕೊಳ್ಳುವುದು ಮತ್ತು ಸ್ವೀಕರಿಸುವುದು ಹಾಗೂ ಚಾರ್ಜುಗಳನ್ನು ವಸೂಲು ಮಾಡುವುದು;

(vi) ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಪಠ್ಯೇತರ ಚಟುವಟಿಕೆಗಳಿಗೆ ಅವಕಾಶಗಳನ್ನು ಕಲ್ಪಿಸುವುದು;

(vii) ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಕ್ಯಾಂಪಸುಗಳ, ಪ್ರಾದೇಶಿಕ ಕೇಂದ್ರಗಳ, ಅಧ್ಯಯನ ಕೇಂದ್ರಗಳ ಫ್ಯಾಕಲ್ಟಿ, ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವುದು;

(viii) ವಿಶ್ವವಿದ್ಯಾಲಯದ ಅಥವಾ ಒಂದು ಘಟಕ ಕಾಲೇಜಿನ ಅಥವಾ ಕ್ಯಾಂಪಸ್ಸಿನ, ಪ್ರಾದೇಶಿಕ ಕೇಂದ್ರದ, ಅಧ್ಯಯನ ಕೇಂದ್ರದ ಉದ್ದೇಶಕ್ಕಾಗಿ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದಿರುವ, ಯಾವುದೇ ರೀತಿಯ ಸ್ವಯಂ ದೇಣಿಗೆಗಳು ಮತ್ತು ಕೊಡುಗೆಗಳನ್ನು ಸ್ವೀಕರಿಸುವುದು ಮತ್ತು ನ್ಯಾಸ ಮತ್ತು ದತ್ತಿ ಸ್ವತ್ತುಗಳೂ ಸೇರಿದಂತೆ, ಯಾವುದೇ ಚರ ಅಥವಾ ಸ್ಥಿರ ಸ್ವತ್ತನ್ನು ಆರ್ಜಿಸುವುದು, ಹೊಂದಿರುವುದು, ನಿರ್ವಹಿಸುವುದು, ನಡೆಸುವುದು ಮತ್ತು ಹಸ್ತಾಂತರ ಮಾಡುವುದು;

(ix) ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸಿಕೊಂಡು ಬರುವುದು ಹಾಗೂ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ ವಿದ್ಯಾರ್ಥಿಗಳಿಗೆ ವಸತಿ ಸ್ಥಳಗಳಾಗಿ ಮಾನ್ಯತೆ ನೀಡುವುದು;

(x) ವಸತಿಯ ಮೇಲ್ವಿಚಾರಣೆ ಮಾಡುವುದು ಮತ್ತು ನಿಯಂತ್ರಣ ಮಾಡುವುದು ಹಾಗೂ ವಿದ್ಯಾರ್ಥಿಗಳು ಮತ್ತು ಎಲ್ಲಾ ಪ್ರವರ್ಗಗಳ ಸಿಬ್ಬಂದಿಗಳಲ್ಲಿ ಶಿಸ್ತು ನಿಯಂತ್ರಣ ಮಾಡುವುದು ಮತ್ತು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ನಡತೆ ಸಂಹಿತೆಯನ್ನು ರೂಪಿಸುವುದೂ ಒಳಗೊಂಡಂತೆ, ಅಂಥ ಸಿಬ್ಬಂದಿಗಳ ಸೇವಾಷರತ್ತುಗಳನ್ನು ನಿರೂಪಿಸುವುದು;

(xi) ಶೈಕ್ಷಣಿಕ, ಆಡಳಿತಾತ್ಮಕ ಮತ್ತು ಬೆಂಬಲ ಸಿಬ್ಬಂದಿಯ ಹುದ್ದೆಗಳನ್ನು ಮತ್ತು ಇತರ ಅವಶ್ಯ ಹುದ್ದೆಗಳನ್ನು ಸೃಜಿಸುವುದು;

(xii) ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ಉದ್ದೇಶಗಳಿಗಾಗಿ ಇತರ ವಿಶ್ವವಿದ್ಯಾಲಯಗಳೊಡನೆ ಸಹಕರಿಸುವುದು ಮತ್ತು ಸಹಯೋಗ ಹೊಂದುವುದು;

(xiii) ಶಿಕ್ಷಕರಿಗೆ, ಪಾಠಗಳನ್ನು ರಚಿಸುವವರಿಗೆ, ಮೌಲ್ಯಮಾಪಕರಿಗೆ ಮತ್ತಿತರ ಶೈಕ್ಷಣಿಕ ಸಿಬ್ಬಂದಿಗೆ ಪುನರ್ಮನನ ವ್ಯಾಸಂಗಕ್ರಮಗಳು, ಅಭಿಮುಖ ವ್ಯಾಸಂಗ ಕ್ರಮಗಳು, ಕಾರ್ಯಾಗಾರಗಳು, ವಿಚಾರಗೋಷ್ಠಿಗಳು ಮತ್ತಿತರ ಕಾರ್ಯಕ್ರಮಗಳನ್ನು ಏರ್ಪಡಿಸುವುದು ಮತ್ತು ನಡೆಸುವುದು;

(xiv) ಶೈಕ್ಷಣಿಕ ಪರಿಷತ್ತಿನ ಅನುಮೋದನೆಯೊಂದಿಗೆ ವಿಶ್ವವಿದ್ಯಾಲಯಕ್ಕೆ ಅಥವಾ ಘಟಕ ಕಾಲೇಜಿಗೆ, ಪ್ರಾದೇಶಿಕ ಕೇಂದ್ರಗಳಿಗೆ, ಅಧ್ಯಯನ ಕೇಂದ್ರಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮತ್ತು ಈ ಅಧಿನಿಯಮದಲ್ಲಿ ಕಲ್ಪಿಸಿದ ವ್ಯಾಪ್ತಿಗಿಂತ ಕಡಿಮೆಯಿಲ್ಲದಂತೆ ಕರ್ನಾಟಕದ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮಾನಕ ಗುಣಮಟ್ಟಗಳನ್ನು ನಿರ್ಧರಿಸುವುದು;

(xv) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಕಾರ್ಯರೂಪಕ್ಕೆ ತರಲು ಅವಶ್ಯವಾಗಬಹುದಾದಂಥ ಇತರ ಎಲ್ಲಾ ಕ್ರಮಗಳನ್ನು ಅಥವಾ ಕಾರ್ಯಗಳನ್ನು, ಅವು ಮೇಲೆ ಹೇಳಿದ ಅಧಿಕಾರಗಳಿಗೆ ಪ್ರಾಸಂಗಿಕವಾಗಿರಲಿ ಅಥವಾ ಇಲ್ಲದಿರಲಿ, ಕೈಗೊಳ್ಳುವುದು;

(xvi) ಪರೀಕ್ಷೆಗಳ ಆಧಾರದ ಮೇಲೆ ಅಥವಾ ಸರ್ಕಾರದಿಂದ ಅನುಮೋದಿತವಾದ ಇತರ ಯಾವುದೇ ಮೌಲ್ಯಮಾಪನ ವಿಧಾನದ ಆಧಾರದ ಮೇಲೆ ನೀಡಲು ಪದವಿಗಳು, ಡಿಪ್ಲೋಮಾಗಳು, ಪ್ರಮಾಣಪತ್ರಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಸ್ಥಾಪಿಸುವುದು;

(xvii) ಫಿಲಂಗಳು, ಕ್ಯಾಸೆಟ್‌ಗಳು, ಧ್ವನಿಸುರುಳಿಗಳು, ದೃಶ್ಯಸುರುಳಿಗಳು, ಸಿ.ಡಿ., ವಿ.ಸಿ.ಡಿ. ಮತ್ತು ಇತರ ತಂತ್ರಾಂಶಗಳೂ ಹಾಗೂ ಇತರ ಸಂಬಂಧಿತ ವಿದ್ಯುನ್ಮಾನ ಮತ್ತು ಮುದ್ರಣ ಮಾಧ್ಯಮ ಸೇರಿದಂತೆ ಬೋಧಕ ಸಾಮಗ್ರಿಗಳನ್ನು ತಯಾರಿಸುವುದಕ್ಕಾಗಿ ಅವಕಾಶ ಕಲ್ಪಿಸುವುದು;

(xviii) ಪ್ರಬಂಧಕ ಮಂಡಳಿಯ ಅನುಮೋದನೆಯೊಡನೆ ವಿಶ್ವವಿದ್ಯಾಲಯದ ಉದ್ದೇಶಗಳಿಗಾಗಿ ವಿಶ್ವವಿದ್ಯಾಲಯದ ಸ್ವತ್ತುಗಳನ್ನು ಭದ್ರತೆಯಾಗಿ ನೀಡಿ ಅಥವಾ ನೀಡದೆ ಹಣವನ್ನು ಪಡೆಯುವುದು, ಸಂಗ್ರಹಿಸುವುದು, ಚಂದಾದಾರರಾಗುವುದು ಮತ್ತು ಸಾಲ ಪಡೆಯುವುದು;

(xix) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುದೇ ಇತರ ಶೈಕ್ಷಣಿಕ ಸಂಸ್ಥೆಗಳ ಆಡಳಿತವನ್ನು ವಶಪಡಿಸಿಕೊಳ್ಳುವುದು, ವಹಿಸಿಕೊಳ್ಳುವುದು ಮತ್ತು ನಡೆಸುವುದು;

(xx) ಕಾರ್ಯಕಾರಿ ಪರಿಷತ್ತು ಪೂರ್ವಾನುಮೋದನೆಯೊಂದಿಗೆ ಸ್ವತ್ತುಗಳನ್ನು ಆರ್ಜಿಸುವುದು;

(xxi) ವಿಶ್ವವಿದ್ಯಾಲಯದ ಮೇಲಿನ ಉದ್ದೇಶಗಳಿಗೆ ಸಂಬಂಧಿಸಿದ ಅಥವಾ ಪ್ರಾಸಂಗಿಕವಾದ ಯಾವುದೇ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು.

**9. ವಿಶ್ವವಿದ್ಯಾಲಯವು ಎಲ್ಲಾ ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲರಿಗೂ ಮುಕ್ತವಾಗಿರತಕ್ಕದ್ದು.–** ವಿಶ್ವವಿದ್ಯಾಲಯದ ಪ್ರವೇಶಗಳು ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲಾ ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು, ಎಲ್ಲಾ ಪ್ರವೇಶಗಳನ್ನು ಅರ್ಹತಾ ಪರೀಕ್ಷೆಗಳಲ್ಲಿನ ಅರ್ಹತೆಯ ಆಧಾರದ ಮೇಲೆ ಮಾಡತಕ್ಕದ್ದು:

ಪರಂತು, ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳ ಪ್ರವೇಶದಲ್ಲಿ ಶೇಕಡಾ ನಲವತ್ತರಷ್ಟನ್ನು ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ಮೀಸಲಿಡತಕ್ಕದ್ದು ಮತ್ತು ಪ್ರವೇಶಗಳನ್ನು ರಾಜ್ಯ ಸರ್ಕಾರವು ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡತಕ್ಕದ್ದು ಮತ್ತು ಸೀಟುಗಳನ್ನು ಅರ್ಹತ ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ರೂಪಿಸುವ ಮೀಸಲಾತಿ ನೀತಿಗೆ ಅನುಸಾರವಾಗಿ ಹಂಚಿಕೆ ಮಾಡತಕ್ಕದ್ದು:

ಮತ್ತು ಪರಂತು, ಯಾವುದೇ ಕೋರ್ಸಿನಲ್ಲಿ ಹತ್ತಕ್ಕಿಂತ ಕಡಿಮೆ ಸೀಟುಗಳು ಇರುವಲ್ಲಿ, ಸ್ನಾತಕೋತ್ತರ ಇಂಥ ಕೋರ್ಸುಗಳನ್ನು ಒಟ್ಟಿಗೆ ಒಂದುಗೂಡಿಸುವ ಮೂಲಕ ಮೀಸಲಿಡತಕ್ಕದ್ದು ಮತ್ತು ಯಾವುದೇ ಕೋರ್ಸಿನಲ್ಲಿ ಮೂರು ಸೀಟುಗಳಿಗಿಂತ ಕಡಿಮೆ ಇರುವಲ್ಲಿ, ಅವುಗಳನ್ನು ಸರದಿ ಸುತ್ತಿನಲ್ಲಿ ಮೀಸಲಿಡತಕ್ಕದ್ದು.

**10. ರಾಷ್ಟ್ರೀಯ ಅಧಿಮಾನ್ಯತೆ.–** ವಿಶ್ವವಿದ್ಯಾಲಯವು ಪ್ರಾರಂಭವಾದ ತರುವಾಯ ಆದಷ್ಟು ಬೇಗನೆ ಸಂಬಂಧಪಟ್ಟ ಶಾಸನಾತ್ಮಕ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳಿಂದ ಅಧಿಮಾನ್ಯತೆಯನ್ನು ಕೋರತಕ್ಕದ್ದು ಮತ್ತು ಖಾಸಗಿ ವಿಶ್ವವಿದ್ಯಾಲಯಗಳು ನಡೆಸುವ ಎಲ್ಲಾ ವ್ಯಾಸಂಗ ಕ್ರಮಗಳು ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ವಿನಿಯಮಗಳಿಗೆ ಅನುಸಾರವಾಗಿ ಇರತಕ್ಕದ್ದು.

**11. ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು.–** ಪ್ರಾಯೋಜಕ ಸಂಸ್ಥೆಯು ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದಂತೆ ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಇವುಗಳಲ್ಲಿ ಪ್ರತಿಯೊಂದನ್ನು ಪ್ರಾಯೋಜಕ ಸಂಸ್ಥೆಯು ತನ್ನ ವಿವೇಚನಾನುಸಾರ ಚಲಾಯಿಸಬಹುದು, ಎಂದರೆ:–

(i) ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಪುನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(ii) ವಿಶ್ವವಿದ್ಯಾಲಯದ ಪ್ರಥಮ ಪ್ರಬಂಧಕ ಮಂಡಳಿಯನ್ನು ರಚಿಸುವುದು;

(iii) ಪ್ರಬಂಧಕ ಮಂಡಳಿಯ ಅಧ್ಯಕ್ಷರನ್ನು ನಾಮನಿರ್ದೇಶಿಸುವುದು;

(iv) ಪ್ರಬಂಧಕ ಮಂಡಳಿಯ ಸದಸ್ಯರಾಗಿ ಮೂರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(v) ಕಾರ್ಯಕಾರಿ ಪರಿಷತ್ತಿನ ಸದಸ್ಯರಾಗಿ ಇಬ್ಬರು ವ್ಯಕ್ತಿಗಳನ್ನು ನಾಮ ನಿರ್ದೇಶಿಸುವುದು;

(vi) ವಿಶ್ವವಿದ್ಯಾಲಯದ ದತ್ತಿ ನಿಧಿಗೆ ದೇಣಿಗೆ ನೀಡಲು ನಿಧಿ ಮೂಲಗಳನ್ನು ನಿರ್ಧರಿಸುವುದು;

(vii) ವಿಶ್ವವಿದ್ಯಾಲಯದ ಹಣದ ವಿನಿಯೋಗ ಮತ್ತು ವೆಚ್ಚ ಮಾಡುವುದನ್ನು ನಿರ್ಧರಿಸುವುದು;

(viii) ಈ ಅಧಿನಿಯಮದಲ್ಲಿ ಉಪಬಂಧಿಸಿರುವ ವಿಧಾನದಲ್ಲಿ ಪ್ರಬಂಧಕ ಮಂಡಳಿಯ ಸಭೆಯಲ್ಲಿಯ ವಿವಾದಗಳನ್ನು ಬಗೆಹರಿಸುವುದು;

## ಅಧ್ಯಾಯ – III

## ವಿಶ್ವವಿದ್ಯಾಲಯದ ಅಧಿಕಾರಿಗಳು

**12. ವಿಶ್ವವಿದ್ಯಾಲಯದ ಅಧಿಕಾರಿಗಳು.–** ಈ ಮುಂದಿನವರು ವಿಶ್ವವಿದ್ಯಾಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:–

(i) ಸಂದರ್ಶಕರು;

(ii) ಸಹ–ಸಂದರ್ಶಕರು;

(iii) ಕುಲಾಧಿಪತಿಗಳು;

(iv) ಕುಲಪತಿಗಳು;

(v) ಸಹಕುಲಪತಿಗಳು;

(vi) ಕುಲಸಚಿವರು;

(vii) ಹಣಕಾಸು ಅಧಿಕಾರಿ; ಮತ್ತು

(viii) ಪರಿನಿಯಮಗಳ ಮೂಲಕ ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಘೋಷಿಸಬಹುದಾದಂಥ ಇತರ ಅಧಿಕಾರಿಗಳು.

**13. ಸಂದರ್ಶಕರು.–** (1) ಕರ್ನಾಟಕದ ಘನತೆವೆತ್ತ ರಾಜ್ಯಪಾಲರು ವಿಶ್ವವಿದ್ಯಾಲಯದ ಸಂದರ್ಶಕರಾಗಿರತಕ್ಕದ್ದು ಮತ್ತು ಸಂದರ್ಶಕರು ವಿಶ್ವವಿದ್ಯಾಲಯದ ಕಾರ್ಯನಿರ್ವಹಣೆಯ ಸುಧಾರಣೆಗಾಗಿ ಸಲಹೆಗಳನ್ನು ನೀಡಬಹುದು.

(2) ಸಂದರ್ಶಕರು, ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಸಂದರ್ಶಕರು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ವ್ಯವಹಾರಗಳಿಗೆ ಸಂಬಂಧಿಸಿದಂತೆ, ಯಾವುದೇ ಪತ್ರ ಅಥವಾ ಮಾಹಿತಿಯನ್ನು ತರಿಸಿಕೊಳ್ಳುವುದು.

(ii) ಸಂದರ್ಶಕರು, ಅವರು ಸ್ವೀಕರಿಸಿದ ಮಾಹಿತಿಯ ಆಧಾರದ ಮೇಲೆ ವಿಶ್ವವಿದ್ಯಾಲಯಗಳ ಯಾವುದೇ ಪ್ರಾಧಿಕಾರವು ಮಾಡಿದ ಯಾವುದೇ ಆದೇಶ, ನಡೆಸಿದ ವ್ಯವಹರಣೆಗಳು ಅಥವಾ ಕೈಗೊಂಡ ತೀರ್ಮಾನಗಳು, ಈ ಅಧಿನಿಯಮ, ಪಿನಿಯಮಗಳು ಅಥವಾ ನಿಯಮಗಳಿಗೆ ಪೂರಕವಾಗಿಲ್ಲವೆಂದು ಮನಗಂಡರೆ ಅವರು ವಿಶ್ವವಿದ್ಯಾಲಯದ ಹಿತಾಸಕ್ತಿಯಿಂದ ತಾವು ಸೂಕ್ತವೆಂದು ಭಾವಿಸಬಹುದಾದಂಥ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಹಾಗೆ ಹೊರಡಿಸಿದ ನಿರ್ದೇಶನಗಳನ್ನು ಸಂಬಂಧಪಟ್ಟವರೆಲ್ಲರೂ ಪಾಲಿಸತಕ್ಕದ್ದು.

**14. ಸಹ-ಸಂದರ್ಶಕರು.-** (1) ಕರ್ನಾಟಕ ಸರ್ಕಾರದ ಮಾನ್ಯ ಉನ್ನತ ಶಿಕ್ಷಣ ಸಚಿವರು ವಿಶ್ವವಿದ್ಯಾಲಯದ ಸಹ-ಸಂದರ್ಶಕರಾಗಿರತಕ್ಕದ್ದು.

(2) ಸಂದರ್ಶಕರ ಅನುಪಸ್ಥಿತಿಯಲ್ಲಿ ಸಹ-ಸಂದರ್ಶಕರು ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**15. ಕುಲಾಧಿಪತಿಗಳು.-** (1) ಕುಲಾಧಿಪತಿಯವರನ್ನು ಪ್ರಾಯೋಜಕ ಸಂಸ್ಥೆಯು ನೇಮಿಸತಕ್ಕದ್ದು.

(2) ಪ್ರಾಯೋಜಕ ಸಂಸ್ಥೆಯ ಪ್ರಸ್ತುತ ಅಧ್ಯಕ್ಷರು ಮೊದಲನೇ ಕುಲಾಧಿಪತಿಗಳಾಗಿರತಕ್ಕದ್ದು, ಅವರು ತಮ್ಮ ಜೀವನಪರ್ಯಂತ ಅಥವಾ ಅವರು ತಮ್ಮ ಪದವನ್ನು ಬಿಟ್ಟುಕೊಡುವವರೆಗೆ ಕುಲಾಧಿಪತಿಗಳಾಗಿ ಪದಧಾರಣ ಮಾಡಿರತಕ್ಕದ್ದು.

(3) ತದನಂತರದ ಕುಲಾಧಿಪತಿಗಳು, ಅಂಥ ನೇಮಕಾತಿಯನ್ನು ಪರಿಗಣಿಸುವ ಸಂದರ್ಭದಲ್ಲಿ ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ, ಪ್ರಾಯೋಜಕ ಸಂಸ್ಥೆಯ ನ್ಯಾಸಧಾರಿಯಾಗಿರತಕ್ಕದ್ದು ಅಥವಾ ಶಿಕ್ಷಣ, ವಿಜ್ಞಾನ, ಸಂಸ್ಕೃತಿ ಅಥವಾ ಸಾರ್ವಜನಿಕ ಜೀವನ ಕ್ಷೇತ್ರಗಳಲ್ಲಿ ರಾಷ್ಟ್ರೀಯ ಮಟ್ಟದ ಛಾಪನ್ನು ಪಡೆದಿರುವ ಅಂಥ ಇತರ ವ್ಯಕ್ತಿಯಾಗಿರತಕ್ಕದ್ದು.

(4) ಹಾಗೆ ನೇಮಕಗೊಂಡ ತದನಂತರದ ಕುಲಾಧಿಪತಿಗಳು ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ಪದಧಾರಣ ಮಾಡತಕ್ಕದ್ದು.

(5) ಕುಲಾಧಿಪತಿಗಳು ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳ ಅಡಿಯಲ್ಲಿ ಅವರಿಗೆ ಪ್ರದಾನ ಮಾಡಬಹುದಾದಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು, ಅವುಗಳಲ್ಲಿ ಈ ಮುಂದಿನ ಅಧಿಕಾರಗಳು ಒಳಗೊಂಡಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುವುದು;

(ii) ಸಂದರ್ಶಕರ ಮತ್ತು ಸಹ-ಸಂದರ್ಶಕರಿಬ್ಬರ ಗೈರುಹಾಜರಿಯಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಘಟಿಕೋತ್ಸವಗಳಲ್ಲಿ ಅಧ್ಯಕ್ಷತೆಯನ್ನು ವಹಿಸುವುದು;

(iii) ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವುದು;

(iv) ಈ ಅಧಿನಿಯಮ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಅನುಸಾರವಾಗಿ ಕುಲಪತಿಗಳನ್ನು ನೇಮಿಸುವುದು ಅಥವಾ ಪುನರ್ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(v) ಈ ಅಧಿನಿಯಮದ 16ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ನಾಮನಿರ್ದೇಶಕ ಸಮಿತಿಯ ಸದಸ್ಯರಾಗಿ ಒಬ್ಬ ವ್ಯಕ್ತಿಯನ್ನು ನಾಮನಿರ್ದೇಶನ ಮಾಡುವುದು;

(vi) ಸಹಕುಲಪತಿಗಳು, ಡೀನ್, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿಗಳ ನೇಮಕಾತಿಯನ್ನು ಪೂರ್ವಾನುಮೋದಿಸುವುದು;

(vii) ಪ್ರಬಂಧಕ ಮಂಡಳಿಯ ಸದಸ್ಯರನ್ನಾಗಿ ಇಬ್ಬರು ಶಿಕ್ಷಣ ತಜ್ಞರನ್ನು ನಾಮನಿರ್ದೇಶಿಸುವುದು;

(viii) ಮೊದಲ ಸಹಕುಲಪತಿಗಳು ಮತ್ತು ಹಣಕಾಸು ಅಧಿಕಾರಿಗಳನ್ನು ನೇಮಿಸುವುದು;

(ix) ಮೊದಲ ವ್ಯವಸ್ಥಾಪನಾ ಮಂಡಳಿ, ಹಣಕಾಸು ಸಮಿತಿ, ಸಂಶೋಧನಾ ಪರಿಷತ್ತು ಹಾಗೂ ಶೈಕ್ಷಣಿಕ ಪರಿಷತ್ತುಗಳನ್ನು ರಚಿಸುವುದು;

(x) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ ಕಾರ್ಯಸೂಚಿ ವಿಷಯಗಳನ್ನು ಪೂರ್ವಾನುಮೋದಿಸುವುದು;

(xi) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ (ಪ್ರಬಂಧಕ ಮಂಡಳಿಯ ಸಭೆಯಲ್ಲಿ ಉಂಟಾದ ವಿವಾದಗಳನ್ನು ಹೊರತುಪಡಿಸಿ) ವಿವಾದಗಳನ್ನು ಪರಿಹರಿಸುವುದು.

(6) ಪದಾಧಿಕಾರಿ ಅಥವಾ ಸಂಸ್ಥೆ ಮತ್ತು ವಿಶ್ವವಿದ್ಯಾಲಯದ ಯಾವುದೇ ಇತರ ಪದಾಧಿಕಾರಿ ಅಥವಾ ಸಂಸ್ಥೆಯ ನಡುವೆ ವಿವಾದಗಳು ಉಂಟಾದಲ್ಲಿ, ಆ ವಿವಾದವನ್ನು ಕುಲಾಧಿಪತಿಯವರ ಪರ್ಯಾಲೋಚನೆಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿವಾದದ ಸಂದರ್ಭದಲ್ಲಿ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**16. ಕುಲಪತಿಗಳು.**– (1) (2)ನೇ ಉಪಪ್ರಕರಣದ ಉಪಬಂಧಗಳಿಗೆ ಅನುಸಾರವಾಗಿ ನಾಮನಿರ್ದೇಶಕ ಸಮಿತಿಯು ಶಿಫಾರಸ್ಸು ಮಾಡಿದ ಮೂರು ವ್ಯಕ್ತಿಗಳ ಪೈಕಿಯಿಂದ ಒಬ್ಬರನ್ನು ಮೂರು ವರ್ಷಗಳ ಅವಧಿಗಾಗಿ ಕುಲಪತಿಗಳನ್ನಾಗಿ, ಪರಿನಿಯಮಗಳಲ್ಲಿ ನಿಯಮಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರು ನೇಮಿಸತಕ್ಕದ್ದು. ಮೂರು ವರ್ಷಗಳ ಅವಧಿಯು ಮುಗಿದ ತರುವಾಯ, ಇದನ್ನು ಮೂರು ವರ್ಷಗಳ ಮತ್ತೊಂದು ಅವಧಿಗೆ ನವೀಕರಿಸಬಹುದು:

ಪರಂತು, ಕುಲಪತಿಯವರು, ತಮ್ಮ ಅವಧಿ ಮುಗಿದ ನಂತರವೂ ಹೊಸ ಕುಲಪತಿಯವರು ಸೇರಿಕೊಳ್ಳುವವರೆಗೆ ಪದದಲ್ಲಿ ಮುಂದುವರೆಯತಕ್ಕದ್ದು. ಆದಾಗ್ಯೂ ಈ ಅವಧಿಯು ಯಾವುದೇ ಸಂದರ್ಭದಲ್ಲಿ ಒಂದು ವರ್ಷವನ್ನು ಮೀರತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಹೇಳಿರುವ ನಾಮನಿರ್ದೇಶಕ ಸಮಿತಿಯಲ್ಲಿ ಈ ಮುಂದಿನ ವ್ಯಕ್ತಿಗಳು ಇರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು ನಾಮನಿರ್ದೇಶಿಸಿದ ಒಬ್ಬ ವ್ಯಕ್ತಿ;

(ii) ಪ್ರಬಂಧಕ ಮಂಡಳಿಯ ಇಬ್ಬರು ನಾಮ ನಿರ್ದೇಶಿತರು, ಇವರಲ್ಲಿ ಒಬ್ಬರನ್ನು ಪ್ರಬಂಧಕ ಮಂಡಳಿಯು ಸಮಿತಿಯ ಸಂಚಾಲಕರೆಂದು ನಾಮನಿರ್ದೇಶಿಸತಕ್ಕದ್ದು.

(3) ನಾಮನಿರ್ದೇಶನ ಸಮಿತಿಯು, ಅರ್ಹತೆಯ ಆಧಾರದ ಮೇಲೆ ಕುಲಪತಿಯ ಹುದ್ದೆಗೆ ಸೂಕ್ತವಾದ ಮೂರು ವ್ಯಕ್ತಿಗಳ ಹೆಸರನ್ನು ಶಿಫಾರಸ್ಸು ಮಾಡತಕ್ಕದ್ದು ಮತ್ತು ಅದನ್ನು ಪ್ರತಿಯೊಬ್ಬ ವ್ಯಕ್ತಿಯ ವಿದ್ಯಾರ್ಹತೆ ಮತ್ತಿತರ ವಿಶಿಷ್ಟ ಪ್ರಶಸ್ತಿಗಳನ್ನು ತಿಳಿಸುವ ಒಂದು ಸಂಕ್ಷಿಪ್ತ ವರದಿಯೊಂದಿಗೆ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು.

(4) ಕುಲಪತಿಯವರು ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಾಹಕ ಮತ್ತು ಶೈಕ್ಷಣಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣವನ್ನು ಚಲಾಯಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯದ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೊಳಿಸತಕ್ಕದ್ದು:

ಪರಂತು, ಶಿಕ್ಷಕರ ನೇಮಕಾತಿಯನ್ನು ಹೊರತುಪಡಿಸಿ ಕೂಡಲೇ ಕ್ರಮವನ್ನು ಕೈಗೊಳ್ಳಬೇಕಾದ ತುರ್ತು ಸ್ವರೂಪದ ಯಾವುದೇ ಇತರ ವಿಷಯಗಳಲ್ಲಿ ಮತ್ತು ಅದನ್ನು ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ವಿಶ್ವವಿದ್ಯಾಲಯವು ಇದಕ್ಕಾಗಿ ಅಧಿಕೃತಗೊಳಿಸಿದ್ದ ಯಾವೊಬ್ಬ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ಇತರ ಸಂಸ್ಥೆಯು ಕೂಡಲೇ ಕ್ರಮಕೈಗೊಳ್ಳುವುದು ಸಾಧ್ಯವಿರದಿರುವಾಗ ಕುಲಪತಿಯವರು ತಾನು ಸೂಕ್ತವೆಂದು ಭಾವಿಸಬಹುದಾದಂತಹ ಕ್ರಮವನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆದು ಕೈಗೊಳ್ಳತಕ್ಕದ್ದು.

(5) ಕುಲಪತಿಯವರು ಪರಿನಿಯಮಗಳು ಅಥವಾ ನಿಯಮಗಳಲ್ಲಿ ಹೇಳಲಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು:

ಪರಂತು, ಕುಲಪತಿಗಳ ಅಭಿಪ್ರಾಯದಲ್ಲಿ, ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಯಾವುದೇ ನಿರ್ಣಯವು, ಈ ಅಧಿನಿಯಮ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳು, ವಿನಿಯಮಗಳು ಅಥವಾ ನಿಯಮಗಳ ಮೂಲಕ ಪ್ರದತ್ತವಾದ ಅಧಿಕಾರದ ಹೊರಗಿದ್ದರೆ ಅಥವಾ ವಿಶ್ವವಿದ್ಯಾಲಯದ ಹಿತಾಸಕ್ತಿಗೆ ಪ್ರತಿಕೂಲವಾಗಬಹುದಾಗಿದ್ದರೆ, ಅದರ ನಿರ್ಣಯದ ದಿನಾಂಕದಿಂದ ಹದಿನೈದು ದಿನಗಳ ಒಳಗೆ ತನ್ನ ನಿರ್ಣಯವನ್ನು ಪರಿಷ್ಕರಿಸಲು ಸಂಬಂಧಪಟ್ಟ ಪ್ರಾಧಿಕಾರವನ್ನು ಆತನು ಕೋರತಕ್ಕದ್ದು ಮತ್ತು ಪ್ರಾಧಿಕಾರವು ಅಂಥ ನಿರ್ಣಯವನ್ನು ಸಂಪೂರ್ಣವಾಗಿ ಅಥವಾ ಭಾಗಶಃವಾಗಿ ಪರಿಷ್ಕರಿಸಲು ನಿರಾಕರಿಸಿದ ಸಂದರ್ಭದಲ್ಲಿ ಅಥವಾ ಹದಿನೈದು ದಿನಗಳೊಳಗೆ ಯಾವುದೇ ನಿರ್ಣಯವನ್ನು ತೆಗೆದುಕೊಳ್ಳಲು ವಿಫಲವಾದಲ್ಲಿ, ನಂತರ ಅಂಥ ವಿಷಯವನ್ನು ಕುಲಾಧಿಪತಿಗಳಿಗೆ ಕಳುಹಿಸತಕ್ಕದ್ದು ಮತ್ತು ಈ ಬಗ್ಗೆ ಇವರ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

(6) ಕುಲಪತಿಯವರ ಸೇವೆಗಳನ್ನು, ಪ್ರಬಂಧಕ ಮಂಡಳಿಯ ಅನುಮೋದನೆಯೊಂದಿಗೆ ಮತ್ತು ಸಹಜ ನ್ಯಾಯದ ತತ್ವಗಳನ್ನು ಅನುಸರಿಸಿದ ನಂತರ ಹಾಗೂ ಶಿಸ್ತಿನ ಆಧಾರದ ಮೇಲೆ ಅಂತ್ಯಗೊಳಿಸುವ ಸಂದರ್ಭವೂ ಸೇರಿದಂತೆ, ಪ್ರಕರಣದ ಬಗ್ಗೆ ಕುಲಪತಿಯು ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡಿದ ತರುವಾಯ, ಕುಲಾಧಿಪತಿಯವರು ಅಂತ್ಯಗೊಳಿಸಬಹುದು.

(7) ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಸಂದರ್ಶಕರು, ಸಹ–ಸಂದರ್ಶಕರು ಮತ್ತು ಕುಲಾಧಿಪತಿಯವರು ಇವರುಗಳ ಗೈರು ಹಾಜರಿಯ ಸಂದರ್ಭದಲ್ಲಿ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**17. ಸಹಕುಲಪತಿಗಳು.**– ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಮೂರು ಜನರನ್ನು ಮೀರದಂತೆ ಸಹಕುಲಪತಿಗಳನ್ನು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**18. ವ್ಯಾಸಂಗ ವಿಭಾಗಗಳ ಡೀನ್‌ಗಳು.**– ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಪರಿನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವ್ಯಾಸಂಗ ವಿಭಾಗಗಳ ಡೀನ್‌ಗಳನ್ನು ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**19. ಕುಲಸಚಿವರು.**- (1) ಕುಲಾಧಿಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಸಚಿವರನ್ನು ನೇಮಕ ಮಾಡತಕ್ಕದ್ದು.

(2) ಪರಿನಿಯಮಗಳಲ್ಲಿ ಪರಿಭಾಷಿಸಿರುವಂಥ ಎಲ್ಲಾ ಕರಾರುಗಳನ್ನು ವಿಶ್ವವಿದ್ಯಾಲಯದ ಪರವಾಗಿ ಕುಲಸಚಿವರು ಮಾಡಿಕೊಳ್ಳತಕ್ಕದ್ದು ಮತ್ತು ಅದಕ್ಕೆ ಸಹಿ ಹಾಕತಕ್ಕದ್ದು.

(3) ಕುಲಸಚಿವರು ವಿಶ್ವವಿದ್ಯಾಲಯದ ಪರವಾಗಿ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಪರಿನಿಯಮಗಳಿಂದ ಪ್ರದತ್ತಗೊಳಿಸಬಹುದಾದಂಥ ಅಥವಾ ಕುಲಾಧಿಪತಿಯವರು ಮತ್ತು ಕುಲಪತಿಯವರು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು ವಿಶ್ವವಿದ್ಯಾಲಯದ ದಾಖಲೆಗಳು ಮತ್ತು ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು, ಕುಲಪತಿಯವರು ಅಥವಾ ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಅಂಥ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿತಕ್ಕದ್ದು.

**20. ಹಣಕಾಸು ಅಧಿಕಾರಿ.**- ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು, ಪರಿನಿಯಮಗಳ ಮೂಲಕ ಪ್ರದತ್ತಗೊಳಿಸಬಹುದಾದ ಅಂಥ ವಿಧಾನದಲ್ಲಿ ಹಣಕಾಸು ಅಧಿಕಾರಿಯನ್ನು ನೇಮಕ ಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**21. ಇತರ ಅಧಿಕಾರಿಗಳು.**- ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ ನೇಮಕಾತಿಯ ವಿಧಾನ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಕರ್ತವ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ - IV

## ವಿಶ್ವವಿದ್ಯಾಲಯದ ಪ್ರಾಧಿಕಾರಗಳು

**22. ವಿಶ್ವವಿದ್ಯಾಲಯದ ಪ್ರಾಧಿಕಾರಗಳು.**- ಈ ಮುಂದಿನವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:-

(i) ಪ್ರಬಂಧಕ ಮಂಡಳಿ;

(ii) ವ್ಯವಸ್ಥಾಪನಾ ಮಂಡಳಿ;

(iii) ಶೈಕ್ಷಣಿಕ ಪರಿಷತ್ತು;

(iv) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು;

(v) ಹಣಕಾಸು ಸಮಿತಿ; ಮತ್ತು

(vi) ವಿಶ್ವವಿದ್ಯಾಲಯದ ಪ್ರಾಧಿಕಾರಗಳೆಂದು ಪರಿನಿಯಮಗಳ ಮೂಲಕ ಘೋಷಿಸಬಹುದಾದ ಅಂಥ ಇತರ ಪ್ರಾಧಿಕಾರಗಳು.

**23. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು.**- (1) ಪ್ರಬಂಧಕ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಾಧಿಪತಿಯವರು - ಅಧ್ಯಕ್ಷರು;

(ii) ಕುಲಪತಿಯವರು - ಸದಸ್ಯರು;

(iii) ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(iv) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(v) ರಾಜ್ಯ ಸರ್ಕಾರವು ನಾಮ ನಿರ್ದೇಶನ ಮಾಡಿದ ಆಡಳಿತವನ್ನು ಒಳಗೊಂಡಂತೆ ವ್ಯವಸ್ಥಾಪನೆ, ಹಣಕಾಸು ಅಥವಾ ಯಾವುದೇ ಇತರ ವಿಶೇಷ ಕ್ಷೇತ್ರದಲ್ಲಿನ ಒಬ್ಬರು ತಜ್ಞರು;

(vi) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಇಬ್ಬರು ವ್ಯಕ್ತಿಗಳು ಅವರ ಪೈಕಿ ಒಬ್ಬರು ಮಹಿಳೆಯಾಗಿರತಕ್ಕದ್ದು;

(vii) ಸಹ ಕುಲಪತಿಯವರು ಮತದಾನದ ಹಕ್ಕಿಲ್ಲದ ಸದಸ್ಯರಾಗಿರತಕ್ಕದ್ದು;

(viii) ವಿಶ್ವವಿದ್ಯಾಲಯ ಅನುದಾನ ಆಯೋಗದ ನಾಮನಿರ್ದೇಶಿತ ಒಬ್ಬ ಸುಪ್ರಸಿದ್ಧ ಶಿಕ್ಷಣ ತಜ್ಞರು.

(2) ಕುಲಸಚಿವರು ಪ್ರಬಂಧಕ ಮಂಡಳಿಯ ಮತ ದಾನದ ಹಕ್ಕಿರದ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ಪ್ರಬಂಧಕ ಮಂಡಳಿಯ ಸದಸ್ಯರ ಪದಾವಧಿ, ಸರ್ಕಾರದಿಂದ ನಾಮನಿರ್ದೇಶಿತರಾದ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ನೇಮಕಾತಿ, ನವೀಕರಣ ಮತ್ತು ತೆಗೆದುಹಾಕುವುದು ಮುಂತಾದವುಗಳು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಾಧಿಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರ ಗೈರುಹಾಜರಿಯಲ್ಲಿ ಕುಲಾಧಿಪತಿಯವರಿಂದ ನಾಮನಿರ್ದೇಶಿತರಾದ ಯಾರಾದರೂ ಒಬ್ಬರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು. ಅಂಥ ಸಭೆಯ ಅಧ್ಯಕ್ಷತೆಯನ್ನು ವಹಿಸುವುದಕ್ಕೆ ಕುಲಾಧಿಪತಿಯವರು ಯಾವೊಬ್ಬ ವ್ಯಕ್ತಿಯನ್ನೂ ನಾಮನಿರ್ದೇಶನ ಮಾಡಿರದಿದ್ದಲ್ಲಿ, ಸಭೆಯಲ್ಲಿ ಹಾಜರಿರುವ ಸದಸ್ಯರು ಸರಳ ಬಹುಮತದ ಮೂಲಕ ಅವರುಗಳ ಪೈಕಿಯಿಂದಲೇ ಆ ಸಭೆಗೆ ಮಾತ್ರವೇ ಅಧ್ಯಕ್ಷನನ್ನು ಚುನಾಯಿಸತಕ್ಕದ್ದು.

(5) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಿಗೆ, ಅಂಥ ಸಭೆಯಲ್ಲಿ ಹಾಜರಾಗುವ ಮತ್ತು ಮತದಾನ ನೀಡುವ ಮೂರು ಜನ ಸದಸ್ಯರು ಗಣಪೂರ್ತಿ (ಕೋರಂ) ಆಗಿರತಕ್ಕದ್ದು:

ಪರಂತು, ಪ್ರಬಂಧಕ ಮಂಡಳಿಯ ಯಾವುದೇ ಸಭೆಯ ಕೋರಂ ಪೂರ್ಣವಾಗಬೇಕಾದರೆ ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಿರುವುದು ಮತ್ತು ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ನಾಮನಿರ್ದೇಶಿತರು ಹಾಜರಾಗದೇ ಇದ್ದಾಗ ಕುಲಪತಿಯವರು ಹಾಜರಿರುವುದು ಯಾವಾಗಲೂ ಅವಶ್ಯವಾಗಿರತಕ್ಕದ್ದು.

(6) ಪ್ರಬಂಧಕ ಮಂಡಳಿಯು ವಿಶ್ವವಿದ್ಯಾಲಯದ ಪ್ರಧಾನ ಪ್ರಬಂಧಕ ಸಂಸ್ಥೆಯಾಗಿರತಕ್ಕದ್ದು ಮತ್ತು ಅದು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಕಗೊಳಿಸುವುದು;

(ii) ವಿಶ್ವವಿದ್ಯಾಲಯವು ಅನುಸರಿಸಬೇಕಾದ ಕಾರ್ಯನೀತಿಗಳನ್ನು ರಚಿಸುವುದು;

(iii) ಈ ಅಧಿನಿಯಮದ ಅಥವಾ ಪರಿನಿಯಮಗಳ ಅಥವಾ ನಿಯಮಗಳ ಉಪಬಂಧಗಳಿಗೆ ಅನುಗುಣವಾಗಿ ಇರದ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ತೀರ್ಮಾನಗಳನ್ನು ಪುನರೀಕ್ಷಿಸುವುದು;

(iv) ವಿಶ್ವವಿದ್ಯಾಲಯದ ಆಯವ್ಯಯ ಮತ್ತು ವಾರ್ಷಿಕ ವರದಿಗಳನ್ನು ಅನುಮೋದಿಸುವುದು;

(v) ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸುವುದು ಅಥವಾ ಈಗಾಗಲೇ ಇರುವ ಪರಿನಿಯಮಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವುದು ಅಥವಾ ನಿರಸನಗೊಳಿಸುವುದು;

(vi) ವಿಶ್ವವಿದ್ಯಾಲಯವನ್ನು ಸ್ವಯಂಸಮಾಪನಗೊಳಿಸುವ ನಿರ್ಧಾರವನ್ನು ತೆಗೆದುಕೊಳ್ಳುವುದು;

(vii) ಸರ್ಕಾರಕ್ಕೆ ಸಲ್ಲಿಸುವ ಪ್ರಸ್ತಾವಗಳನ್ನು ಅನುಮೋದಿಸುವುದು;

(viii) ಶುಲ್ಕ ನಿಯಂತ್ರಣ ಸಮಿತಿಗೆ ಮೂವರು ಸದಸ್ಯರನ್ನು ನಾಮನಿರ್ದೇಶನ ಮಾಡುವುದು;

(ix) ವಿಶ್ವವಿದ್ಯಾಲಯದ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕೆ ಅಪೇಕ್ಷಣೀಯವೆಂದು ಕಂಡುಬರುವಂಥ ತೀರ್ಮಾನಗಳನ್ನು ಮತ್ತು ಕ್ರಮಗಳನ್ನು ಕೈಗೊಳ್ಳುವುದು.

(7) ಪ್ರಬಂಧಕ ಮಂಡಳಿಯು ಒಂದು ವರ್ಷದಲ್ಲಿ ಕನಿಷ್ಠ ಮೂರು ಸಲ ಸಭೆ ಸೇರತಕ್ಕದ್ದು.

(8) ಪ್ರಬಂಧಕ ಮಂಡಳಿಯು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಸಮಯ ಮತ್ತು ಸ್ಥಳದಲ್ಲಿ ಸಭೆ ಸೇರತಕ್ಕದ್ದು.

**24. ವ್ಯವಸ್ಥಾಪನಾ ಮಂಡಳಿ.**- (1) ವ್ಯವಸ್ಥಾಪನಾ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಗಳು;

(ii) ಸಹಕುಲಪತಿಗಳು;

(iii) ಕುಲಸಚಿವರು;

(iv) ಪ್ರಾಯೋಜಕ ಸಂಸ್ಥೆಯ ಇಬ್ಬರು ನಾಮನಿರ್ದೇಶಿತರು;

(v) ಕುಲಪತಿಗಳು ನಾಮನಿರ್ದೇಶಿಸಬಹುದಾದ ವಿದ್ಯಾಲಯಗಳ ಇಬ್ಬರು ಡೀನ್‌ಗಳು;

(2) ಕುಲಪತಿಯವರು ವ್ಯವಸ್ಥಾಪನಾ ಮಂಡಳಿಯ ಅಧ್ಯಕ್ಷರಾಗಿರತಕ್ಕದ್ದು ಮತ್ತು ಕುಲಸಚಿವರು ವ್ಯವಸ್ಥಾಪನಾ ಮಂಡಳಿಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ವ್ಯವಸ್ಥಾಪನಾ ಮಂಡಳಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ವ್ಯವಸ್ಥಾಪನಾ ಮಂಡಳಿಯ ಎಲ್ಲಾ ಸಭೆಗಳಲ್ಲಿ ಯಾವಾಗಲೂ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು ಹಾಗೂ ಕುಲಪತಿಯವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೇ ಇದ್ದ ಸಂದರ್ಭದಲ್ಲಿ ಸಭೆಯಲ್ಲಿ ಹಾಜರಿರುವ ಸದಸ್ಯರು ಚುನಾಯಿಸಿದ ಯಾವುದೇ ಇತರ ಸದಸ್ಯರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ವ್ಯವಸ್ಥಾಪನಾ ಮಂಡಳಿಯ ಸಭೆಯಲ್ಲಿ ಯಾವುದೇ ವಿಷಯವನ್ನು ಕುರಿತು ವಿವಾದ ಉಂಟಾದಲ್ಲಿ ಸದರಿ ವಿಷಯವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯದ ಬಗ್ಗೆ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**25. ಶೈಕ್ಷಣಿಕ ಪರಿಷತ್ತು.**–(1) ಶೈಕ್ಷಣಿಕ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಕಾರ್ಯದರ್ಶಿಗಳು

(iv) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಶೈಕ್ಷಣಿಕ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಶೈಕ್ಷಣಿಕ ಸಂಸ್ಥೆಯಾಗಿರತಕ್ಕದ್ದು ಮತ್ತು ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಹಾಗೂ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**26. ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು.**– (1) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಸಂಶೋಧನಾ ಮತ್ತು ಅನ್ವೇಷಣಾ ಸಮಿತಿಯಾಗಿರತಕ್ಕದ್ದು ಹಾಗೂ ಸಂಶೋಧನಾ ಕ್ಷೇತ್ರಗಳ ಆದ್ಯತೆಯೂ ಒಳಗೊಂಡಂತೆ, ವಿಶ್ವವಿದ್ಯಾಲಯವು ಕೈಗೊಳ್ಳಬೇಕಾದ ಸಂಶೋಧನೆಯ ಬಗ್ಗೆ ಒಂದು ವ್ಯಾಪಕವಾದ ಪರಿಪೂರ್ಣ ಭವಿಷ್ಯದ್ ದೃಷ್ಟಿಯನ್ನು ಒದಗಿಸತಕ್ಕದ್ದು. ಈ ಪರಿಷತ್ತು, ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಮತ್ತು ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಸಂಶೋಧನೆ ಮತ್ತು ಅನ್ವೇಷಣಾ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಸಂಶೋಧನೆಯ ಡೀನ್ – ಕಾರ್ಯದರ್ಶಿ

(iv) ಅನ್ವೇಷಣಾ ವಿಭಾಗದ ಮುಖ್ಯಸ್ಥರು – ಸದಸ್ಯರು

(v) ಎಲ್ಲಾ ವ್ಯಾಸಂಗ ವಿಭಾಗಗಳ ಡೀನ್‌ಗಳು – ಸದಸ್ಯರು ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

**27. ಹಣಕಾಸು ಸಮಿತಿ.**– (1) ಹಣಕಾಸು ಸಮಿತಿ ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಾಧಿಪತಿಯವರು ಅಥವಾ ಅವರ ನಾಮನಿರ್ದೇಶಿತರು – ಅಧ್ಯಕ್ಷರು

(ii) ಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಸದಸ್ಯರು

(iv) ಹಣಕಾಸು ಅಧಿಕಾರಿ – ಕಾರ್ಯದರ್ಶಿ

(v) ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು – ಸದಸ್ಯರು; ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಹಣಕಾಸು ಸಮಿತಿಯು ಹಣಕಾಸಿನ ವಿಷಯಗಳನ್ನು ಕೈಗೊಳ್ಳುವ ವಿಶ್ವವಿದ್ಯಾಲಯದ ಪ್ರಧಾನ ಹಣಕಾಸು ಸಂಸ್ಥೆಯಾಗಿರತಕ್ಕದ್ದು ಹಾಗೂ ಅದು ಈ ಅಧಿನಿಯಮ, ನಿಯಮಗಳು ಮತ್ತು ಪರಿನಿಯಮಗಳ ಉಪಬಂಧಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಹಣಕಾಸು ವಿಷಯಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**28. ಇತರ ಪ್ರಾಧಿಕಾರಗಳು.–** ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ರಚನೆ, ಅಧಿಕಾರಗಳು ಹಾಗೂ ಪ್ರಕಾರ್ಯಗಳು ಪರಿನಿಯಮಗಳಿಂದ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

**29. ಒಂದು ಪ್ರಾಧಿಕಾರದ ಅಥವಾ ಸಂಸ್ಥೆಯ ಸದಸ್ಯತ್ವಕ್ಕೆ ಅನರ್ಹತೆ.–** ವಿಶ್ವವಿದ್ಯಾಲಯದ ಸಂಸ್ಥೆಗಳ ಯಾವುವೇ ಪ್ರಾಧಿಕಾರಗಳ ಒಬ್ಬ ವ್ಯಕ್ತಿಯು,–

(ಎ) ಅಸ್ವಸ್ಥ ಚಿತ್ತನಾಗಿದ್ದು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿಸಲ್ಪಟ್ಟಿದ್ದರೆ;

(ಬಿ) ಅವಿಮುಕ್ತ ದಿವಾಳಿಯಾಗಿದ್ದರೆ;

(ಸಿ) ನೈತಿಕ ಅಧಃಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದರೆ;

(ಡಿ) ಖಾಸಗಿ ಬೋಧನಾ ತರಗತಿಗಳನ್ನು ನಡೆಸುತ್ತಿದ್ದರೆ ಅಥವಾ ಸ್ವತಃ ನಿರತನಾಗಿದ್ದರೆ;

(ಇ) ಯಾವುದೇ ವಿಧದಲ್ಲಿ, ಎಲ್ಲಿಯೇ, ಯಾವುದೇ ಪರೀಕ್ಷೆಯನ್ನು ನಡೆಸುವಲ್ಲಿ ಅನುಚಿತ ಅಭ್ಯಾಸದಲ್ಲಿ ತೊಡಗಿದ್ದಕ್ಕಾಗಿ ಅಥವಾ ಉತ್ತೇಜಿಸಿದ್ದಕ್ಕಾಗಿ ದಂಡಿತನಾಗಿದ್ದರೆ;

(ಎಫ್) ಪ್ರಾಯೋಜಿತ ಸಂಸ್ಥೆಯು ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಯಾವೊಬ್ಬ ಸದಸ್ಯನನ್ನು ಆ ಪದವನ್ನು ಹೊಂದಿರುವುದಕ್ಕೆ ಅರ್ಹನಲ್ಲನೆಂದು ಲಿಖಿತದಲ್ಲಿ ಅಭಿಪ್ರಾಯ ನೀಡಿದಾಗಲೆಲ್ಲಾ,

–ಸದಸ್ಯನಾಗಿರುವುದಕ್ಕೆ ಅನರ್ಹನಾಗತಕ್ಕದ್ದು.

**30. ಖಾಲಿಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಕಾರ್ಯ ಅಥವಾ ವ್ಯವಹರಣೆಗಳು ಕೇವಲ ಅದರಲ್ಲಿ ಯಾವುದೇ ಖಾಲಿಸ್ಥಾನ ಇದೆ ಎಂಬ ಕಾರಣದಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣದಿಂದ ಮಾತ್ರವೇ ಅಸಿಂಧುವಾಗತಕ್ಕದ್ದಲ್ಲ.

**31. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು.–** (1) ಯಾವುವೇ ಕಾರ್ಯಸೂಚಿ ವಿಷಯಗಳನ್ನು ಕುಲಾಧಿಪತಿಯವರ ಪೂರ್ವಾನುಮೋದನೆಯನ್ನು ಪಡೆಯದೇ ಪ್ರಬಂಧಕ ಮಂಡಳಿಯ ಅಥವಾ ಕಾರ್ಯಕಾರಿ ಪರಿಷತ್ತು ಅಥವಾ ಯಾವುದೇ ಸಮಿತಿಯ ಸಭೆಗಳ ಕಾರ್ಯಸೂಚಿ ವಿಷಯಗಳಲ್ಲಿ ಸೇರಿಸತಕ್ಕದ್ದಲ್ಲ ಅಥವಾ ಚರ್ಚೆಗೆ ತೆಗೆದುಕೊಳ್ಳತಕ್ಕದ್ದಲ್ಲ ಮತ್ತು ತೀರ್ಮಾನಿಸತಕ್ಕದ್ದಲ್ಲ.

(2) ಈ ಅಧಿನಿಯಮದ ಯಾವುದೇ ಉಪಬಂಧಗಳನ್ನು ಪಾಲಿಸದೆ ಇರುವ ಸಂದರ್ಭದಲ್ಲಿ, ಕುಲಾಧಿಪತಿಯವರು ವಿಶ್ವವಿದ್ಯಾಲಯದ ಯಾವುದೇ ಪದಾಧಿಕಾರಿ ಅಥವಾ ಸಂಸ್ಥೆಯು ತೆಗೆದುಕೊಂಡ ಎಲ್ಲಾ ತೀರ್ಮಾನಗಳನ್ನು ವಿಪರ್ಯಯಗೊಳಿಸುವ ಮೂಲಕ ಪರಿಹಾರ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಅಧಿಕಾರವನ್ನು ಎಲ್ಲಾ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಅಂಥ ಪರಿಹಾರ ಕ್ರಮದ ಪರಿಣಾಮವಾಗಿ ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ವಿಶ್ವವಿದ್ಯಾಲಯದ ಪದಾಧಿಕಾರಿ ಅಥವಾ ಸಂಸ್ಥೆಯು ಕೈಗೊಂಡಿದ್ದ ಎಲ್ಲಾ ಅಂಥ ಕ್ರಮಗಳು, ಮೊದಲಿನಿಂದಲೂ ಶೂನ್ಯ ಮತ್ತು ಅಕೃತ ಎಂದು ಭಾವಿಸತಕ್ಕದ್ದು ಹಾಗೂ ತತ್ಪರಿಣಾಮವಾಗಿ, ಉಪಬಂಧ ಪಾಲಿಸದೇ ಇದ್ದ ವಿಷಯ ಅಥವಾ ನಿರ್ಧಾರದ ಸಂಬಂಧದಲ್ಲಿ ಅದಕ್ಕೆ ಮುಂಚೆ ಇದ್ದ ವಸ್ತುಸ್ಥಿತಿಯೇ ಮುಂದುವರಿಯತಕ್ಕದ್ದು.

## ಅಧ್ಯಾಯ – V

## ಪರಿನಿಯಮಗಳು ಮತ್ತು ವಿನಿಯಮಗಳು

**32. ಪರಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಪರಿನಿಯಮಗಳು ವಿಶ್ವವಿದ್ಯಾಲಯಕ್ಕೆ ಮತ್ತು ಸಿಬ್ಬಂದಿಗೆ ಸಂಬಂಧಿಸಿದ ಎಲ್ಲಾ ಅಥವಾ ಯಾವುದೇ ವಿಷಯಕ್ಕೆ ಈ ಕೆಳಗಿನಂತೆ ಉಪಬಂಧ ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಕಾರ್ಯಕಲಾಪಗಳನ್ನು ನಡೆಸುವ ಮತ್ತು ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸದಿರುವ ಸಂಸ್ಥೆಗಳ ರಚನೆಯ ಕಾರ್ಯವಿಧಾನ;

(ii) ಶಾಶ್ವತ ಶಾಸನಬದ್ಧ ದತ್ತಿ ನಿಧಿ, ವಿಶ್ವವಿದ್ಯಾಲಯ ದತ್ತಿ ನಿಧಿ, ಸಾಮಾನ್ಯ ನಿಧಿ ಹಾಗೂ ಅಭಿವೃದ್ಧಿ ನಿಧಿಗಳ ನಿರ್ವಹಣೆ;

(iii) ಕುಲಪತಿಗಳು, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರ ನೇಮಕಾತಿಯ ನಿಬಂಧನೆಗಳು ಹಾಗೂ ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಪ್ರಕಾರ್ಯಗಳು;

(iv) ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ, ಅಧ್ಯಾಪಕರ ಮತ್ತು ನೌಕರರ ನೇಮಕಾತಿ ವಿಧಾನ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(v) ವಿಶ್ವವಿದ್ಯಾಲಯ ಹಾಗೂ ಅದರ ಅಧಿಕಾರಿಗಳು, ವ್ಯಾಸಂಗ ವಿಭಾಗದ (ಫ್ಯಾಕಲ್ಟಿ) ಸದಸ್ಯರು, ನೌಕರರು ಹಾಗೂ ವಿದ್ಯಾರ್ಥಿಗಳ ನಡುವೆ ಉಂಟಾದ ವಿವಾದಗಳನ್ನು ಪರಿಹರಿಸುವ ಕಾರ್ಯವಿಧಾನ;

(vi) ವಿಭಾಗಗಳು ಮತ್ತು ವ್ಯಾಸಂಗ ವಿಭಾಗಗಳ (ಫ್ಯಾಕಲ್ಟಿಗಳ) ಸೃಜನೆ, ರದ್ಧತಿ ಅಥವಾ ಪುನಾರಚನೆ;

(vii) ಇತರ ವಿಶ್ವವಿದ್ಯಾಲಯಗಳು ಅಥವಾ ಉನ್ನತ ಕಲಿಕಾ ಸಂಸ್ಥೆಗಳ ಜೊತೆಯಲ್ಲಿ ಸಹಕರಿಸಬೇಕಾದ ರೀತಿ;

(viii) ಗೌರವ ಪದವಿಗಳ ನೀಡಿಕೆಯ ಕಾರ್ಯವಿಧಾನ;

(ix) ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿವೇತನ ಮಂಜೂರಾತಿಗೆ ಸಂಬಂಧಿಸಿದ ಉಪಬಂಧಗಳು;

(x) ವಿವಿಧ ವ್ಯಾಸಂಗ ಕ್ರಮಗಳಲ್ಲಿನ ಸೀಟುಗಳ ಸಂಖ್ಯೆಗೆ ಸಂಬಂಧಿಸಿದ ಕಾರ್ಯನೀತಿಗಳು ಮತ್ತು ಅಂಥ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಕಾರ್ಯವಿಧಾನ;

(xi) ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಶುಲ್ಕಕ್ಕೆ ಸಂಬಂಧಿಸಿದ ಕಾರ್ಯನೀತಿ;

(xii) ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಉಚಿತ ಶಿಕ್ಷಣ, ಪದಕಗಳು ಹಾಗೂ ಬಹುಮಾನಗಳನ್ನು ಪ್ರಾರಂಭಿಸುವುದು;

(xiii) ಪ್ರಬಂಧಕ ಮಂಡಳಿಯು ನಿರ್ಧರಿಸಬಹುದಾದ ಅಥವಾ ಈ ಅಧಿನಿಯಮದ ಅಡಿಯಲ್ಲಿ ಪರಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬೇಕಾದ ಅಗತ್ಯತೆಯುಳ್ಳ ಯಾವುದೇ ಇತರ ವಿಷಯಗಳು.

**33. ಪರಿನಿಯಮಗಳ ರಚನೆ ವಿಧಾನ.-** (1) ವ್ಯವಸ್ಥಾಪನಾ ಮಂಡಳಿಯು ರಚಿಸಿದ ಮೊದಲ ಪರಿನಿಯಮಗಳನ್ನು ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ವ್ಯವಸ್ಥಾಪನಾ ಮಂಡಳಿಯು ಸಲ್ಲಿಸಿದ ಮೊದಲ ಪರಿನಿಯಮಗಳನ್ನು ಪ್ರಬಂಧಕ ಮಂಡಳಿಯು ಪರಿಗಣಿಸತಕ್ಕದ್ದು ಹಾಗೂ ತಾನು ಅವಶ್ಯವೆಂದು ಭಾವಿಸಬಹುದಾದ ಅಂಥ ಮಾರ್ಪಾಡುಗಳು, ಯಾವುದಾದರು ಇದ್ದಲ್ಲಿ, ಅವುಗಳೊಡನೆ ತನ್ನ ಅನುಮೋದನೆಯನ್ನು ನೀಡತಕ್ಕದ್ದು.

(3) ವಿಶ್ವವಿದ್ಯಾಲಯವು, ಪ್ರಬಂಧಕ ಮಂಡಳಿಯು ಅನುಮೋದಿಸಿದ ಮೊದಲ ಪರಿನಿಯಮಗಳನ್ನು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ಪ್ರಕಟಿಸತಕ್ಕದ್ದು ಮತ್ತು ತದನಂತರ ಮೊದಲ ಪರಿನಿಯಮಗಳ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**34. ಪರಿನಿಯಮಗಳ ತಿದ್ದುಪಡಿಯ ಅಧಿಕಾರ.-** ಪ್ರಬಂಧಕ ಮಂಡಳಿಯು ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸಬಹುದು ಅಥವಾ ಪರಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ಅವನ್ನು ನಿರಸನಗೊಳಿಸಬಹುದು.

**35. ವಿನಿಯಮಗಳು.-** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ವಿನಿಯಮಗಳು ಈ ಮುಂದಿನ ವಿಷಯಗಳಿಗೆ ಉಪಬಂಧಗಳನ್ನು ಕಲ್ಪಿಸಬಹುದು, ಎಂದರೆ:-

(i) ವಿಶ್ವವಿದ್ಯಾಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ವಿದ್ಯಾರ್ಥಿ ಪಟ್ಟಿಯಲ್ಲಿ ಅವರುಗಳ ದಾಖಲಾತಿ ಹಾಗೂ ಮುಂದುವರಿಕೆ;

(ii) ವಿಶ್ವವಿದ್ಯಾಲಯದ ಎಲ್ಲಾ ಪದವಿಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ನಿಗದಿಪಡಿಸತಕ್ಕ ವ್ಯಾಸಂಗ ಕ್ರಮಗಳು;

(iii) ಪದವಿಗಳ ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರದಾನ;

(iv) ಸಂಶೋಧನಾ ವೇತನಗಳು (ಫೆಲೋಶಿಪ್), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಪದಕಗಳು ಮತ್ತು ಬಹುಮಾನಗಳನ್ನು ನೀಡಲು ಷರತ್ತುಗಳು;

(v) ಪರೀಕ್ಷೆಗಳನ್ನು ನಡೆಸುವುದು ಹಾಗೂ ಪರೀಕ್ಷೆ ನಡೆಸುವ ಸಂಸ್ಥೆಗಳು, ಪರೀಕ್ಷಕರು, ಪರೀಕ್ಷಾ ಮೇಲ್ವಿಚಾರಕರು, ಟ್ಯಾಬುಲೇಟರ್‌ಗಳು ಮತ್ತು ಮಾಡರೇಟರ್‌ಗಳ ನೇಮಕಾತಿ ಷರತ್ತುಗಳು ಮತ್ತು ವಿಧಾನ ಹಾಗೂ ಅವರ ಕರ್ತವ್ಯಗಳು;

(vi) ವಿಶ್ವವಿದ್ಯಾಲಯದ ಪರೀಕ್ಷೆಗಳಿಗೆ, ಪದವಿಗಳಿಗೆ ಹಾಗೂ ಇತರ ಶೈಕ್ಷಣಿಕ ಪ್ರಶಸ್ತಿಗಳಿಗೆ ಪ್ರವೇಶಕ್ಕೆ ವಿಧಿಸತಕ್ಕ ಶುಲ್ಕ;

(vii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನಲ್ಲಿ ವಿದ್ಯಾರ್ಥಿಗಳ ನಿವಾಸಕ್ಕಾಗಿ ಷರತ್ತುಗಳು;

(viii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಶಿಸ್ತು ಪಾಲನೆ;

(ix) ಈ ಅಧಿನಿಯಮದ ಅಡಿಯಲ್ಲಿನ ಪರಿನಿಯಮಗಳಲ್ಲಿ ಉಪಬಂಧ ಕಲ್ಪಿಸಬಹುದಾಂಥ ಇತರ ಎಲ್ಲಾ ವಿಷಯಗಳು.

**36. ವಿನಿಯಮಗಳ ರಚನೆ ವಿಧಾನ.-** ವಿನಿಯಮಗಳನ್ನು ಶೈಕ್ಷಣಿಕ ಪರಿಷತ್ತು ರಚಿಸತಕ್ಕದ್ದು ಹಾಗೂ ವ್ಯವಸ್ಥಾಪನಾ ಮಂಡಳಿಯು ಅನುಮೋದಿಸತಕ್ಕದ್ದು.

**37. ವಿನಿಯಮಗಳ ತಿದ್ದುಪಡಿಗೆ ಅಧಿಕಾರ.-** ವ್ಯವಸ್ಥಾಪನಾ ಮಂಡಳಿಯ ಅನುಮೋದನೆಯೊಡನೆ ಶೈಕ್ಷಣಿಕ ಪರಿಷತ್ತು ಹೊಸ ವಿನಿಯಮಗಳನ್ನು ಅಥವಾ ಹೆಚ್ಚುವರಿ ವಿನಿಯಮಗಳನ್ನು ರಚಿಸಬಹುದು ಅಥವಾ ವಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ನಿರಸನಗೊಳಿಸಬಹುದು.

**38. ಶುಲ್ಕ ನಿಯಂತ್ರಣ ಸಮಿತಿ.-** (1) ಸರ್ಕಾರವು ರಚಿಸಿದ ನಿವೃತ್ತ ಸರ್ವೋಚ್ಚ ನ್ಯಾಯಾಲಯದ ಅಥವಾ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು ಮುಖ್ಯಸ್ಥರಾಗಿರುವ ಮತ್ತು ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ, ಉನ್ನತ ಶಿಕ್ಷಣ

ಪ್ರಭಾರದಲ್ಲಿರುವ ಸರ್ಕಾರದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು. ವೈದ್ಯಕೀಯ ಶಿಕ್ಷಣದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು. ಒಬ್ಬ ಮಹಿಳೆಯೂ ಸೇರಿದಂತೆ ಪ್ರಬಂಧಕ ಮಂಡಳಿಯು ನಾಮನಿರ್ದೇಶಿಸಿದ ಇಬ್ಬರು ಶಿಕ್ಷಣ ತಜ್ಞರು ಇವರುಗಳನ್ನು ಒಳಗೊಂಡ ಒಂದು ಶುಲ್ಕ ನಿಯಂತ್ರಣ ಸಮಿತಿಯು, 9ನೇ ಪ್ರಕರಣದ ಅಡಿಯಲ್ಲಿ ಕರ್ನಾಟಕದ ವಿದ್ಯಾರ್ಥಿಗಳಿಗಾಗಿ ಮೀಸಲಿರಿಸಿದ ವಿಶ್ವವಿದ್ಯಾಲಯದ ಸ್ಥಾನಗಳ ಶುಲ್ಕವನ್ನು ನಿಯಂತ್ರಿಸತಕ್ಕದ್ದು. ಸಮಿತಿಯಲ್ಲಿ ಈ ಉದ್ದೇಶಕ್ಕಾಗಿ ಒಬ್ಬರು ಖ್ಯಾತ ಚಾರ್ಟರ್ಡ್ ಅಕೌಂಟೆಂಟ್ ರವರನ್ನು ಸಹ ಸದಸ್ಯನನ್ನಾಗಿ ಸೇರಿಸಿಕೊಳ್ಳತಕ್ಕದ್ದು.

(2) ಸಮಿತಿಯು ವಿಶ್ವವಿದ್ಯಾಲಯದ ಪ್ರವೇಶಗಳ ಮತ್ತು ಶುಲ್ಕದ ಸಂಗ್ರಹಣೆಯ ಅನುಪಾಲನೆಯನ್ನು ನೋಡಿಕೊಳ್ಳತಕ್ಕದ್ದು.

## ಅಧ್ಯಾಯ – VI

## ಸಂಕೀರ್ಣ

**39. ನೌಕರರ ಸೇವಾ ಷರತ್ತುಗಳು.–** (1) ಪರಿನಿಯಮಗಳ ಮತ್ತು ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಥವಾ ನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳು, ಯಾವುದಾದರೂ ಇದ್ದಲ್ಲಿ, ಅವುಗಳಿಗೆ ಒಳಪಟ್ಟು ಪ್ರತಿಯೊಬ್ಬ ನೌಕರನು ಲಿಖಿತ ಕರಾರಿನ ಅಡಿಯಲ್ಲಿ ನೇಮಕಗೊಳ್ಳತಕ್ಕದ್ದು ಮತ್ತು ಅದನ್ನು ವಿಶ್ವವಿದ್ಯಾಲಯದಲ್ಲಿ ಇಟ್ಟುಕೊಳ್ಳತಕ್ಕದ್ದು ಹಾಗೂ ಅದರ ಪ್ರತಿಯನ್ನು ಸಂಬಂಧಪಟ್ಟ ನೌಕರನಿಗೆ ನೀಡತಕ್ಕದ್ದು.

(2) ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಕಾರ್ಯವಿಧಾನಗಳ ಮೂಲಕ ನಿಯಂತ್ರಿಸತಕ್ಕದ್ದು.

(3) ಕರಾರಿನಿಂದಾಗಿ ವಿಶ್ವವಿದ್ಯಾಲಯ ಮತ್ತು ನೌಕರನ ಮಧ್ಯದಲ್ಲಿ ಉದ್ಭವಿಸಬಹುದಾದ ಯಾವುದೇ ವಿವಾದವನ್ನು, ಲಿಖಿತ ಕರಾರಿನಲ್ಲಿ ಉಪಬಂಧಿಸಿದ ವಿಧಾನದಲ್ಲಿ ಹಾಗೂ ಪರಿನಿಯಮಗಳ ಅನುಸಾರವಾಗಿ ಪರಿಹರಿಸತಕ್ಕದ್ದು.

**40. ಮೇಲ್ಮನವಿ ಹಕ್ಕು.–** ವಿಶ್ವವಿದ್ಯಾಲಯವು ತನ್ನ ನೌಕರರ ಅಥವಾ ವಿದ್ಯಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡ ಸಂದರ್ಭದಲ್ಲಿ, ಬಾಧಿತ ನೌಕರ ಅಥವಾ ವಿದ್ಯಾರ್ಥಿಗಳು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಮೇಲ್ಮನವಿ ಹಕ್ಕನ್ನು ಹೊಂದಿರತಕ್ಕದ್ದು.

**41. ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿ .–** ವಿಶ್ವವಿದ್ಯಾಲಯವು, ತನ್ನ ನೌಕರರ ಪ್ರಯೋಜನಕ್ಕಾಗಿ, ಪರಿನಿಯಮಗಳು ಮತ್ತು ಜಾರಿಯಲ್ಲಿರುವ ಕಾನೂನುಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿಯನ್ನು ರಚಿಸತಕ್ಕದ್ದು ಹಾಗೂ ಅಂಥ ವಿಮಾ ಯೋಜನೆಗಳನ್ನು ಒದಗಿಸತಕ್ಕದ್ದು.

**42. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಇತರ ಸಂಸ್ಥೆಯ ಸದಸ್ಯನಾಗಿ ಯಾವೊಬ್ಬ ವ್ಯಕ್ತಿಯು ಸೂಕ್ತವಾಗಿ ಆಯ್ಕೆಯಾಗಿದ್ದಾನೆಯೇ ಅಥವಾ ನೇಮಕಗೊಂಡಿದ್ದಾನೆಯೇ ಅಥವಾ ಅದಕ್ಕೆ ಅರ್ಹನಾಗಿದ್ದಾನೆಯೇ ಎಂಬ ಯಾವುದೇ ಪ್ರಶ್ನೆ ಉದ್ಭವಿಸಿದರೆ, ಆ ವಿಷಯವನ್ನು ತೀರ್ಮಾನಕ್ಕಾಗಿ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**43. ಸಮಿತಿಗಳ ರಚನೆ.–** 22ನೇ ಪ್ರಕರಣದಲ್ಲಿ ನಮೂದಿಸಿದ ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಅಧಿಕಾರವನ್ನು ಹೊಂದಿರುವ ಅಂಥ ಸದಸ್ಯರನ್ನು ಒಳಗೊಂಡ ಅಂಥ ಪ್ರಾಧಿಕಾರದ ಒಂದು ಸಮಿತಿಯನ್ನು ರಚಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**44. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಂಸ್ಥೆಯ ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ಪೈಕಿ ಯಾವುದೇ ಸ್ಥಾನವು ಆಕಸ್ಮಿಕವಾಗಿ ಖಾಲಿಯಾದರೆ, ಯಾರ ಸ್ಥಾನವು ಖಾಲಿಯಾಗಿ ತುಂಬಬೇಕಾಗಿ ಬಂದಿದೆಯೋ ಆ ಸದಸ್ಯನನ್ನು ಯಾವ ರೀತಿಯಲ್ಲಿ ಆರಿಸಲಾಗಿತ್ತೋ ಅದೇ ರೀತಿಯಲ್ಲಿ ಹೊಸ ಸದಸ್ಯನನ್ನು ಆರಿಸಿ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ಖಾಲಿ ಸ್ಥಾನವನ್ನು ಭರ್ತಿ ಮಾಡಿದ ವ್ಯಕ್ತಿಯು ಆತನು ಯಾವ ಸದಸ್ಯನ ಸ್ಥಾನದಲ್ಲಿ ಭರ್ತಿಯಾಗಿರುವನೋ ಆ ಸದಸ್ಯನು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯನಾಗಿ ಉಳಿಯುತ್ತಿದ್ದ ಬಾಕಿ ಅವಧಿಯವರೆಗೆ ಮಾತ್ರ ಸದಸ್ಯನಾಗಿರತಕ್ಕದ್ದು.

**45. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.–** ಈ ಅಧಿನಿಯಮ ಅಥವಾ ಪರಿನಿಯಮಗಳು ಅಥವಾ ನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ವಿಶ್ವವಿದ್ಯಾಲಯದ ಯಾವೊಬ್ಬ ಅಧಿಕಾರಿ ಅಥವಾ ಇತರ ನೌಕರರ ವಿರುದ್ಧ ಯಾವುದೇ ದಾವೆ ಅಥವಾ ಇತರ ಕಾನೂನು ವ್ಯವಹರಣೆಗಳನ್ನು ನಡೆಸಲು ಅವಕಾಶ ಇರತಕ್ಕದ್ದಲ್ಲ.

**46. ತಾತ್ಕಾಲಿಕ ಉಪಬಂಧಗಳು.–** ಈ ಅಧಿನಿಯಮ ಮತ್ತು ಪರಿನಿಯಮಗಳ ಯಾವುದೇ ಇತರ ಉಪಬಂಧಗಳಲ್ಲಿ ಏನೇ ಇದ್ದರೂ,–

(i) ಮೊದಲ ಕುಲಪತಿ ಮತ್ತು ಸಹಕುಲಪತಿ. ಯಾರಾದರೂ ಇದ್ದರೆ. ಅವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(ii) ಮೊದಲ ಕುಲಸಚಿವರನ್ನು ಮತ್ತು ಮೊದಲ ಹಣಕಾಸು ಅಧಿಕಾರಿಯವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು; ಮತ್ತು

(iii) ಮೊದಲ ವ್ಯವಸ್ಥಾಪನ ಮಂಡಳಿ, ಮೊದಲ ಹಣಕಾಸು ಸಮಿತಿ, ಮೊದಲ ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಹಾಗೂ ಮೊದಲ ಶೈಕ್ಷಣಿಕ ಪರಿಷತ್ತನ್ನು ಕುಲಾಧಿಪತಿಯವರು ರಚಿಸತಕ್ಕದ್ದು.

**47. ಶಾಶ್ವತ ಶಾಸನಬದ್ಧ ದತ್ತಿ ನಿಧಿ.**– (1) ವಿಶ್ವವಿದ್ಯಾಲಯವು, ಕನಿಷ್ಠ ಇಪ್ಪತ್ತೈದು ಕೋಟಿ ರೂಪಾಯಿಗಳನ್ನುಳ್ಳ ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು ಇದರ ಪೈಕಿ ಕನಿಷ್ಠ ಹದಿನೈದು ಕೋಟಿ ರೂಪಾಯಿಗಳು ನಗದು ರೂಪದಲ್ಲಿ ಮತ್ತು ಇನ್ನುಳಿದದ್ದು ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ಇರತಕ್ಕದ್ದು ಮತ್ತು ಇದನ್ನು ತಾನಾಗಿಯೆ ಹೆಚ್ಚಿಸಬಹುದಾಗಿದ್ದು ಆದರೆ ಕಡಿಮೆ ಮಾಡತಕ್ಕದ್ದಲ್ಲ.

ಪರಂತು, ಬೆಂಗಳೂರು ಅಥವಾ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊರಗಿರುವ ವಿಶ್ವವಿದ್ಯಾಲಯದ ಸಂದರ್ಭದಲ್ಲಿ ಕನಿಷ್ಠ ಹತ್ತು ಕೋಟಿ ರೂಪಾಯಿಗಳು ನಗದು ರೂಪದಲ್ಲಿರತಕ್ಕದ್ದು ಮತ್ತು ಉಳಿದ ಐದು ಕೋಟಿ ರೂಪಾಯಿಗಳು ಬ್ಯಾಂಕ್ ಗ್ಯಾರಂಟಿಯ ರೂಪದಲ್ಲಿರತಕ್ಕದ್ದು.

(2) ವಿಶ್ವವಿದ್ಯಾಲಯವು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಹಣವನ್ನು ಹೂಡಲು ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯವು ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಗೆ ವರ್ಗಾವಣೆ ಮಾಡಬಹುದು. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನೂ ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(4) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಿದ ವರಮಾನದ ಶೇಕಡಾ ಎಪ್ಪತ್ತೈದರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತೈದರಷ್ಟನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಯಲ್ಲಿ ಪುನ: ತೊಡಗಿಸತಕ್ಕದ್ದು.

**48. ವಿಶ್ವವಿದ್ಯಾಲಯದ ದತ್ತಿ ನಿಧಿ.**– (1) ವಿಶ್ವವಿದ್ಯಾಲಯವು, ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ನಿಧಿಗಳನ್ನು ಒಳಗೊಂಡ ವಿಶ್ವವಿದ್ಯಾಲಯದ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದು ಕಾಲಕಾಲಕ್ಕೆ ಸ್ವೀಕರಿಸಬಹುದಾದ ದೇಣಿಗೆಗಳು ಮತ್ತು ಇತರ ನಿಧಿಗಳನ್ನು ಒಳಗೊಂಡಿರತಕ್ಕದ್ದು.

(2) ವಿಶ್ವವಿದ್ಯಾಲಯವು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ವಿಶ್ವವಿದ್ಯಾಲಯದ ದತ್ತಿನಿಧಿಯನ್ನು ಹೂಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯ ದತ್ತಿ ನಿಧಿಯು, ವಿಶ್ವವಿದ್ಯಾಲಯವು ತನ್ನ ಸಾಮಾಜಿಕ ಧ್ಯೇಯೋದ್ದೇಶಗಳನ್ನು ನೆರವೇರಿಸುವ ಸಂದರ್ಭದಲ್ಲಿ ಮತ್ತು/ಅಥವಾ ಮುಂಗಾಣದ ಸನ್ನಿವೇಶದಲ್ಲಿ ಉದ್ಭವಿಸಬಹುದಾದ ಹಣಕಾಸು ಸವಾಲುಗಳಿಂದ ತನ್ನನ್ನು ರಕ್ಷಿಸಿಕೊಳ್ಳುವುದಕ್ಕಾಗಿ, ಸ್ವಇಚ್ಛೆಯಿಂದ ನಿರ್ವಹಿಸಿಕೊಂಡು ಬರಲು ಮತ್ತು ಜವಾಬ್ದಾರಿಯಿಂದ ಹಣ ಹೂಡಿಕೆ ಮಾಡಲು ಇಚ್ಛೆಯುಳ್ಳವರಾಗಿ ಸ್ವಯಂ ವಿಧಿಸಿಕೊಂಡ ನಿಧಿಯಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಗೆ ವರ್ಗಾಯಿಸಬಹುದು. ವಿಶ್ವವಿದ್ಯಾಲಯದ ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನು ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(5) ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಬರುವ ವರಮಾನದ ಶೇಕಡಾ ಎಂಭತ್ತರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸದ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತರಷ್ಟನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**49. ಸಾಮಾನ್ಯ ನಿಧಿ.**– (1) ವಿಶ್ವವಿದ್ಯಾಲಯವು, ಒಂದು ಸಾಮಾನ್ಯ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯವು ವಿಧಿಸಬಹುದಾದ ಎಲ್ಲಾ ಶುಲ್ಕಗಳು;

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವುದೇ ಇತರ ಮೂಲದಿಂದ ಸ್ವೀಕರಿಸಲಾದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ದೇಣಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು;

(2) ಸಾಮಾನ್ಯ ನಿಧಿಗೆ ಜಮಾ ಮಾಡುವ ನಿಧಿಗಳನ್ನು ವಿಶ್ವವಿದ್ಯಾಲಯದ ಎಲ್ಲಾ ಆವರ್ತಕ ವೆಚ್ಚಗಳನ್ನು ಭರಿಸಲು ಉಪಯೋಗಿಸಕೊಳ್ಳತಕ್ಕದ್ದು.

**50. ಅಭಿವೃದ್ಧಿ ನಿಧಿ.-** (1) ವಿಶ್ವವಿದ್ಯಾಲಯವು, ಒಂದು ಅಭಿವೃದ್ಧಿ ನಿಧಿಯನ್ನು ಸಹ ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:-

(i) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ವಿದ್ಯಾರ್ಥಿಗಳಿಂದ ವಿಧಿಸಬಹುದಾದ ಅಭಿವೃದ್ಧಿ ಶುಲ್ಕಗಳು;

(ii) ವಿಶ್ವವಿದ್ಯಾಲಯದ ಅಭಿವೃದ್ಧಿಯ ಉದ್ದೇಶಗಳಿಗಾಗಿ ಯಾವುದೇ ಇತರ ಮೂಲಗಳಿಂದ ಸ್ವೀಕರಿಸಿದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ವಂತಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು; ಮತ್ತು

(v) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಲಾದ ಎಲ್ಲಾ ವರಮಾನಗಳು.

(2) ಅಭಿವೃದ್ಧಿ ನಿಧಿಗೆ ಕಾಲಕಾಲಕ್ಕೆ ಜಮಾ ಮಾಡಿದ ನಿಧಿಯನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಉಪಯೋಗಿಸಕೊಳ್ಳತಕ್ಕದ್ದು.

**51. ನಿಧಿಗಳ ನಿರ್ವಹಣೆ.-** 47, 48, 49 ಮತ್ತು 50ನೇ ಪ್ರಕರಣಗಳಡಿಯಲ್ಲಿ ಸ್ಥಾಪಿಸಲಾದ ನಿಧಿಗಳನ್ನು ಪ್ರಬಂಧಕ ಮಂಡಳಿಯ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ನಿಯಂತ್ರಿಸತಕ್ಕದ್ದು ಹಾಗೂ ನಿರ್ವಹಿಸತಕ್ಕದ್ದು.

**52. ವಾರ್ಷಿಕ ವರದಿ.-** (1) ವಿಶ್ವವಿದ್ಯಾಲಯದ ವಾರ್ಷಿಕ ವರದಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ಅದರ ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಪ್ರಬಂಧಕ ಮಂಡಳಿಯು ವಾರ್ಷಿಕ ವರದಿಯನ್ನು ತನ್ನ ಸಭೆಯಲ್ಲಿ ಪರಿಗಣಿಸತಕ್ಕದ್ದು ಹಾಗೂ ಅದನ್ನು ಮಾರ್ಪಾಡುಗಳೊಡನೆ ಅಥವಾ ಮಾರ್ಪಾಡುಗಳಿಲ್ಲದೆ ಅನುಮೋದಿಸಬಹುದು.

(3) ಪ್ರಬಂಧಕ ಮಂಡಳಿಯು ಸೂಕ್ತವಾಗಿ ಅನುಮೋದಿಸಿದ ವಾರ್ಷಿಕ ವರದಿಯ ಒಂದು ಪ್ರತಿಯನ್ನು ಪ್ರತಿವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ಡಿಸೆಂಬರ್ 31ಕ್ಕೆ ಮೊದಲು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**53. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.-** (1) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕ ಪತ್ರ ಮತ್ತು ಜಮಾ ಖರ್ಚು ಪಟ್ಟಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯಕ್ಕೆ ಎಲ್ಲಾ ಮೂಲಗಳಿಂದ ಪ್ರಾಪ್ತವಾಗುವ ಅಥವಾ ಸ್ವೀಕರಿಸಲಾಗುವ ಎಲ್ಲಾ ನಿಧಿಗಳು ಹಾಗೂ ವಿತರಿಸಿದ ಅಥವಾ ಸಂದಾಯ ಮಾಡಿದ ಎಲ್ಲಾ ಮೊಬಲಗುಗಳನ್ನು ವಿಶ್ವವಿದ್ಯಾಲಯವು ನಿರ್ವಹಿಸುವ ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕಪತ್ರಗಳನ್ನು ಪ್ರತಿ ವರ್ಷವೂ ಭಾರತದ ಚಾರ್ಟೆಡ್ ಅಕೌಂಟೆಂಟ್‌ಗಳ ಸಂಸ್ಥೆಯ ಸದಸ್ಯರಾಗಿರುವ ಒಬ್ಬ ಲೆಕ್ಕಪರಿಶೋಧಕರಿಂದ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಲೆಕ್ಕಪರಿಶೋಧನಾ ವರದಿಯೊಡನೆ, ಪ್ರತಿ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ನವೆಂಬರ್ 30ಕ್ಕೆ ಮೊದಲು ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(4) ವಾರ್ಷಿಕ ಲೆಕ್ಕಪತ್ರಗಳು, ಜಮಾಖರ್ಚು ಪಟ್ಟಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಪ್ರಬಂಧಕ ಮಂಡಳಿಯು ತನ್ನ ಸಭೆಯಲ್ಲಿ ಪರ್ಯಾಲೋಚಿಸತಕ್ಕದ್ದು ಮತ್ತು ಪ್ರಬಂಧಕ ಮಂಡಳಿಯು ಅದನ್ನು ತನ್ನ ಅಭಿಪ್ರಾಯಗಳೊಡನೆ ಸಂದರ್ಶಕರಿಗೆ ಹಾಗೂ ಸರ್ಕಾರಕ್ಕೆ ಪ್ರತಿ ವರ್ಷದ ಡಿಸೆಂಬರ್ 31ಕ್ಕೆ ಮೊದಲು ಕಳುಹಿಸತಕ್ಕದ್ದು.

(5) ಲೆಕ್ಕಪರಿಶೋಧಕರ ವರದಿಯಲ್ಲಿ ಯಾವುದೇ ಮುಖ್ಯ ಬದಲಾವಣೆ ಇದ್ದ ಸಂದರ್ಭದಲ್ಲಿ, ಅವುಗಳನ್ನು ಸರಿಪಡಿಸಲು ರಾಜ್ಯ ಸರ್ಕಾರವು ವಿಶ್ವವಿದ್ಯಾಲಯಕ್ಕೆ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಅಂಥ ನಿರ್ದೇಶನಗಳು ವಿಶ್ವವಿದ್ಯಾಲಯದ ಮೇಲೆ ಬಂಧನಕಾರಿಯಾಗಿರತಕ್ಕದ್ದು.

**54. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ.-** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಮಿತಿಯ ಯಾವುದೇ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ ಅಥವಾ ಗೊತ್ತುವಳಿಯು ಅಥವಾ ವಿಶ್ವವಿದ್ಯಾಲಯದ ಸ್ವಾಧೀನದಲ್ಲಿರುವ ಇತರ ದಾಖಲೆಗಳು ಅಥವಾ ವಿಶ್ವವಿದ್ಯಾಲಯವು ಯುಕ್ತವಾಗಿ ನಿರ್ವಹಿಸುವ ಯಾವುದೇ ರಿಜಿಸ್ಟರ್‌ನಲ್ಲಿಯ ಯಾವುದೇ ನಮೂದುಗಳ ಪ್ರತಿಯನ್ನು, ಅದರ ಮೇಲೆ ಕುಲಸಚಿವರು ಪ್ರಮಾಣೀಕರಿಸಿದ್ದರೆ, ಅದನ್ನು ಅಂಥ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ,

ಗೊತ್ತುವಳಿ ಅಥವಾ ದಾಖಲೆ ಅಥವಾ ರಿಜಿಸ್ಟರ್‌ನಲ್ಲಿ ಇರುವ ನಮೂದನ್ನು ಮೇಲ್ನೋಟದ ಸಾಕ್ಷ್ಯವೆಂಬುದಾಗಿ ಸ್ವೀಕರಿಸತಕ್ಕದ್ದು ಮತ್ತು ವಿಷಯಗಳ ಸಾಕ್ಷಿಯಾಗಿ ಅಂಗೀಕರಿಸತಕ್ಕದ್ದು ಹಾಗೂ ಮೂಲ ದಾಖಲೆಗಳನ್ನೇ ಸಲ್ಲಿಸಿದ್ದರೆ ಅದನ್ನು, ದಾಖಲಿಸಿರುವ ವಿಷಯಗಳು ಮತ್ತು ವಹಿವಾಟುಗಳ ಸಾಕ್ಷ್ಯವಾಗಿ ಅಂಗೀಕರಿಸಲಾಗುತ್ತಿತ್ತೋ, ಅದೇ ರೀತಿಯಲ್ಲಿ ಇವನ್ನೂ ಸಾಕ್ಷ್ಯವಾಗಿ ಅಂಗೀಕರಿಸತಕ್ಕದ್ದು.

55. **ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ.**- ರಾಜ್ಯಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಥವಾ ಅದರಲ್ಲಿ ಇರುವ ಯಾವುವೇ ಉಪಬಂಧಗಳನ್ನು ಅಥವಾ ಅದರಡಿಯಲ್ಲಿ ರಚಿಸಿದ ಯಾವುವೇ ನಿಯಮಗಳು ಅಥವಾ ಆದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿರ್ದೇಶನ ನೀಡುವುದು ಅವಶ್ಯವೆಂದು ಅಥವಾ ಉಚಿತವೆಂದು ಅಭಿಪ್ರಾಯಪಟ್ಟಲ್ಲಿ ಅದು ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ ಅಥವಾ ಸಂದರ್ಭಾನುಸಾರವಾಗಿ ವ್ಯವಸ್ಥಾಪನಾ ಮಂಡಳಿಯು ಅಂಥ ಪ್ರತಿಯೊಂದು ನಿರ್ದೇಶನವನ್ನು ಪಾಲಿಸತಕ್ಕದ್ದು.

56. **ದಂಡಗಳು.**- (1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿತವಾದ ನಿಯಮಗಳು ಉಪಬಂಧಗಳನ್ನು ಅಥವಾ ಯಾವುದೇ ಪರೀಕ್ಷಾ ವಿಷಯಗಳನ್ನು ಅಥವಾ ಪದವಿಗಳನ್ನು ನೀಡುವುದಕ್ಕೆ ಅಥವಾ ಅಂಕಪಟ್ಟಿಗಳನ್ನು ನೀಡುವುದಕ್ಕೆ ಸಂಬಂಧಪಟ್ಟ ವಿಷಯಗಳಲ್ಲಿ ಉಲ್ಲಂಘನೆಗಳನ್ನು ಮಾಡುವ ಯಾವೊಬ್ಬ ವ್ಯಕ್ತಿಯು, ಅಪರಾಧ ನಿರ್ಣಯವಾದ ಮೇಲೆ, ಐವತ್ತು ಸಾವಿರ ರೂಪಾಯಿಗಳಿಗೆ ಕಡಿಮೆಯಲ್ಲದ ಆದರೆ ಹತ್ತು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಆರು ತಿಂಗಳ ಅವಧಿಗಿಂತ ಕಡಿಮೆಯಲ್ಲದ ಆದರೆ ಎರಡು ವರ್ಷಗಳ ಅವಧಿಯವರೆಗೆ ವಿಸ್ತರಿಸಬಹುದಾದ ಕಾರಾವಾಸದಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು:

ಪರಂತು, ಅಪರಾಧವನ್ನು ಎಸಗುವಲ್ಲಿ ವಿಶ್ವವಿದ್ಯಾಲಯವೂ ಸಹ ಒಳಗೊಂಡಿರುವಲ್ಲಿ, ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಈ ಅಧಿನಿಯಮದ ಅಡಿಯಲ್ಲಿ ಮಂಜೂರು ಮಾಡಲಾದ ಅನುಮತಿ ಪತ್ರವನ್ನು ಹಿಂತೆಗೆದುಕೊಳ್ಳತಕ್ಕದ್ದು.

(2) ಈ ಪ್ರಕರಣದ ಅಡಿಯಲ್ಲಿಯ ದಂಡವನ್ನು ಇತರ ಯಾವುದೇ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಲಾದ ದಂಡಕ್ಕೆ ಬಾಧಕವಾಗದಂತೆ ವಿಧಿಸಬಹುದು.

57. **ಪ್ರವೇಶಿಸುವ ಮತ್ತು ಪರಿಶೋಧಿಸುವ ಅಧಿಕಾರ.**- ಈ ಉದ್ದೇಶಕ್ಕಾಗಿ, ರಾಜ್ಯಸರ್ಕಾರದಿಂದ ಪ್ರಾಧಿಕೃತಗೊಂಡ 'ಎ' ಸಮೂಹದ ಅಧಿಕಾರಿ ದರ್ಜೆಗಿಂತ ಕಡಿಮೆಇಲ್ಲದ ದರ್ಜೆಯ ಯಾವೊಬ್ಬ ಅಧಿಕಾರಿಯು, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಶನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ 37) ಅಡಿಯಲ್ಲಿ ನಿರ್ದಿಷ್ಟಪಡಿಸಿರಬಹುದಾದ ಅಂಥ ಷರತ್ತುಗಳಿಗೆ ಒಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ, ಆ ಅಧಿನಿಯಮದ 9ನೇ ಪ್ರಕರಣದ ಅಡಿಯಲ್ಲಿ ಉಪಬಂಧಿಸಲಾದಂತಹವೇ ಅಧಿಕಾರಗಳನ್ನು ಚಲಾಯಿಸಲು ಮತ್ತು ಪ್ರಕಾರ್ಯಗಳನ್ನು ನೆರವೇರಿಸಲು ಅಧಿಕೃತನಾದ ಅಧಿಕಾರಿ ಎಂಬುದಾಗಿ ಭಾವಿಸತಕ್ಕದ್ದು.

58. **ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ನಿರ್ದೇಶನವನ್ನು ನೀಡುವ ಅಧಿಕಾರ.**- (1) ವಿಶ್ವವಿದ್ಯಾಲಯವು ತನ್ನ ರಚನೆ ಅಥವಾ ನಿಗಮನವನ್ನು ನಿಯಂತ್ರಿಸುವ ಕಾನೂನಿಗೆ ಅನುಸಾರವಾಗಿ ತನ್ನ ಸಮಾಪನವನ್ನು ಉದ್ದೇಶಿಸಿದ್ದಲ್ಲಿ, ಅದು ಕನಿಷ್ಠ ಆರು ತಿಂಗಳ ಲಿಖಿತ ಪೂರ್ವ ಸೂಚನೆಯನ್ನು (ನೋಟಿಸು) ಸರ್ಕಾರಕ್ಕೆ ನೀಡತಕ್ಕದ್ದು.

(2) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಈ ಕೆಳಗಿನವುಗಳ ಬಗ್ಗೆ, ಎಂದರೆ:-

(i) ಪದವಿಯನ್ನು ನೀಡುವುದಕ್ಕಾಗಿ ಬೋಧನೆಯ ಗುಣಮಟ್ಟ;

(ii) ಶಿಕ್ಷಣದ ಗುಣಮಟ್ಟ;

(iii) ಉನ್ನತ ಶಿಕ್ಷಣದ ವ್ಯಾಪಾರೀಕರಣವನ್ನು ತಡೆಗಟ್ಟುವುದು;

(iv) ಅಧಿನಿಯಮದ ಉಪಬಂಧಗಳ ಉಲ್ಲಂಘನೆಯ ಬಗ್ಗೆ, ಯಾವುದಾದರೂ ಇದ್ದಲ್ಲಿ,

- ಇವುಗಳ ಬಗ್ಗೆ ನಿಯತಕಾಲಿಕ ಪರಿವೀಕ್ಷಣೆಯನ್ನು ನಡೆಸತಕ್ಕದ್ದು ಮತ್ತು ಸರ್ಕಾರಕ್ಕೆ ವರದಿಯನ್ನು ಕಳುಹಿಸತಕ್ಕದ್ದು.

(3) ದುರ್ವ್ಯವಹರಣೆ, ದುರಾಡಳಿತ ಮತ್ತು ಅಶಿಸ್ತು ಆಗಿದೆ ಎಂಬುದನ್ನು ಗುರುತಿಸಿದರೆ, ಸರ್ಕಾರವು, ವಿಶ್ವವಿದ್ಯಾಲಯದ ಆಡಳಿತವರ್ಗದವರಿಗೆ ಆಡಳಿತವನ್ನು ಸರಿಪಡಿಸಬೇಕೆಂದು ನಿರ್ದೇಶನಗಳನ್ನು ನೀಡತಕ್ಕದ್ದು. ನಿಯಮಿಸಬಹುದಾದ ಅಂಥ ಅವಧಿಯೊಳಗೆ ಆ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುವ ಹಕ್ಕು ಸರ್ಕಾರದಲ್ಲಿ ನಿಹಿತವಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ವಿಧಾನವು, ಸರ್ಕಾರವು ಈ ಸಂಬಂಧದಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು:

ಪರಂತು, ವಿಶ್ವವಿದ್ಯಾಲಯವು ತನ್ನ ಕಾರಣಗಳನ್ನು ಹೇಳಿಕೊಳ್ಳಲು ಸಮಂಜಸ ಅವಕಾಶಗಳನ್ನು ನೀಡಿದ ಹೊರತು ಅಂಥ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

(5) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೋಟಿಸನ್ನು ಸ್ವೀಕರಿಸಿದ ಮೇಲೆ, ಸರ್ಕಾರವು ಸಂಬಂಧಿಸಿದ ನಿಯಂತ್ರಣಾ ಪ್ರಾಧಿಕಾರದೊಡನೆ ಸಮಾಲೋಚಿಸಿ, ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ಅಥವಾ ವ್ಯಾಸಂಗ ಕ್ರಮವನ್ನು ಪರಿಸಮಾಪನಗೊಳಿಸಲು ಉದ್ದೇಶಿಸಿದ ದಿನಾಂಕದಿಂದ, ವಿಶ್ವವಿದ್ಯಾಲಯದಲ್ಲಿ ನಿಯತ ವ್ಯಾಸಂಗ ಕ್ರಮಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕೊನೆಯ ತಂಡ (ಬ್ಯಾಚ್) ತನ್ನ ವ್ಯಾಸಂಗ ಕ್ರಮವನ್ನು ಮುಗಿಸುವವರೆಗೆ ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು.

**59. ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು.**- (1) 58ನೇ ಪ್ರಕರಣದ (5)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ಅದರ ಆಡಳಿತಾತ್ಮಕ ವೆಚ್ಚಗಳನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ನೇಮಿಸಬಹುದಾದ ಅಂಥ ವಿಧಾನದಲ್ಲಿ ಭರಿಸತಕ್ಕದ್ದು.

(2) ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ವಿಶ್ವವಿದ್ಯಾಲಯದ ವೆಚ್ಚವನ್ನು ಭರಿಸಲು 47, 48, 49, ಮತ್ತು 50ನೇ ಪ್ರಕರಣಗಳ ಅಡಿಯಲ್ಲಿ ಉಲ್ಲೇಖಿಸಲಾದ ನಿಧಿಯು ಸಾಕಷ್ಟು ಇಲ್ಲದಿದ್ದಲ್ಲಿ, ಅಂಥ ವೆಚ್ಚವನ್ನು ಸರ್ಕಾರವು, ವಿಶ್ವವಿದ್ಯಾಲಯದ ಸ್ವತ್ತುಗಳು ಮತ್ತು ಆಸ್ತಿಗಳನ್ನು ವಿಲೇ ಮಾಡುವ ಮೂಲಕ ಭರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಸಮಾಪನೆಯು ದುರ್ವ್ಯವಹರಣೆ ಅಥವಾ ದುರಾಡಳಿತದ ಕಾರಣಗಳಿಗಾಗಿ ಆಗಿದ್ದರೆ, ಸರ್ಕಾರವು ಅಂಥ ದುರ್ವ್ಯವಹಾರಕ್ಕೆ ಅಥವಾ ದುರಾಡಳಿತಕ್ಕೆ ಹೊಣೆಯಾಗಿರುವ ವ್ಯಕ್ತಿಗಳನ್ನು ಗುರುತಿಸುವ ಮತ್ತು ಅವರ ಮೇಲೆ ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ದಂಡನೆಯನ್ನು ವಿಧಿಸಲು ಸ್ವತಂತ್ರವಾಗಿರತಕ್ಕದ್ದು.

**60. ತೊಂದರೆಗಳ ನಿವಾರಣೆಗೆ ಅಧಿಕಾರ.**- (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಅಥವಾ ಆದೇಶದ ಮೂಲಕ ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಐದು ವರ್ಷಗಳು ಮುಕ್ತಾಯವಾದ ತರುವಾಯ ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಅಧಿಸೂಚನೆ ಅಥವಾ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

**61. ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ.**- (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಉಭಯ ಸದನಗಳು ಒಪ್ಪಿದರೆ ತದನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ದತಿಯು ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವನ್ನು ಉಂಟುಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಜಿ.ಕೆ. ಬೋರೇಗೌಡ**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) (500 ಪ್ರತಿಗಳು)

KAR(E)/2001/A ...

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ - IV-A | ಬೆಂಗಳೂರು, ಸೋಮವಾರ, ಮಾರ್ಚ್ ೪, ೨೦೧೩ (ಫಾಲ್ಗುಣ ೧೩, ಶಕ ವರ್ಷ ೧೯೩೪) | ನಂ ೫೩೯ |
|---|---|---|
| Part - IV-A | Bangalore, Monday, March 4, 2013 (Phalguna 13, Shaka Varsha 1934) | No. 539 |


ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ

ಅಧಿಸೂಚನೆ

**ಸಂಖ್ಯೆ: ಸಂವ್ಯಶಾಇ 83 ಶಾಸನ 2012, ಬೆಂಗಳೂರು, ದಿನಾಂಕ: 04.03.2013**

ಕೆಎಲ್‌ಇ ತಾಂತ್ರಿಕ ವಿಶ್ವವಿದ್ಯಾಲಯ ವಿಧೇಯಕ, 2012– ಇದಕ್ಕೆ 2013ರ ಫೆಬ್ರವರಿ ತಿಂಗಳ ಇಪ್ಪತ್ತೈದನೇ ದಿನಾಂಕದಂದು ಘನತೆವೆತ್ತ ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2013ರ ಕರ್ನಾಟಕ ಅಧಿನಿಯಮ ಸಂಖ್ಯೆ: 22 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2013 ರ ಕರ್ನಾಟಕ ಅಧಿನಿಯಮ ಸಂಖ್ಯೆ: 22**

(2013ರ ಮಾರ್ಚ್ ಮಾಹೆಯ ನಾಲ್ಕನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಕೆಎಲ್‌ಇ ತಾಂತ್ರಿಕ ವಿಶ್ವವಿದ್ಯಾಲಯ ಅಧಿನಿಯಮ, 2012**

(2013ರ ಫೆಬ್ರವರಿ ಮಾಹೆಯ ಇಪ್ಪತ್ತೈದನೇ ದಿನಾಂಕದಂದು ರಾಜ್ಯಪಾಲರ ಅನುಮತಿಯನ್ನು ಪಡೆಯಲಾಗಿದೆ)

ಸಾಮಾನ್ಯ, ತಾಂತ್ರಿಕ, ಆರೋಗ್ಯ, ವ್ಯವಸ್ಥಾಪನೆ, ನೈಸರ್ಗಿಕ ಮತ್ತು ತತ್ಸಂಬಂಧಿ ವಲಯಗಳಲ್ಲಿ ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಉತ್ತೇಜಿಸಲು ಮತ್ತು ಕೈಗೊಳ್ಳಲು ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದಕ್ಕಾಗಿ ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಸಾಮಾನ್ಯ, ತಾಂತ್ರಿಕ, ಆರೋಗ್ಯ, ವ್ಯವಸ್ಥಾಪನೆ, ನೈಸರ್ಗಿಕ ಮತ್ತು ತತ್ಸಂಬಂಧಿ ವಲಯಗಳಲ್ಲಿ ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಉತ್ತೇಜಿಸಲು ಮತ್ತು ಕೈಗೊಳ್ಳಲು ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೊಂದನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

## ಅಧ್ಯಾಯ – I

## ಪ್ರಾರಂಭಿಕ

1 ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ - (1) ಈ ಅಧಿನಿಯಮವನ್ನು ಕೆಎಲ್‌ಇ ತಾಂತ್ರಿಕ ವಿಶ್ವವಿದ್ಯಾಲಯ ಅಧಿನಿಯಮ 2012 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. ಪರಿಭಾಷೆಗಳು.**- ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) "ಶೈಕ್ಷಣಿಕ ಪರಿಷತ್ತು (ಅಕೆಡೆಮಿಕ್ ಕೌನ್ಸಿಲ್)" ಎಂದರೆ, 26ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿಸಲಾದ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು;

(ಬಿ) "ಕಾರ್ಯಸೂಚಿ ವಿಷಯಗಳು", ಎಂದರೆ, ಪರಿನಿಯಮಗಳಲ್ಲಿ ಹೆಸರಿಸಬಹುದಾದ ಮತ್ತು ಒಂದು ಸಭೆಯಲ್ಲಿ ಆ ವಿಷಯಗಳನ್ನು ಮತ್ತು ಕಲಾಪಗಳನ್ನು ಅನುಮೋದಿಸಬಹುದೆಂದು ತಮ್ಮ ಸಮ್ಮತಿ ಸೂಚಿಸಿ ಕುಲಾಧಿಪತಿಯವರು ಮುಂಚಿತವಾಗಿಯೇ ಲಿಖಿತ ಅನುಮೋದನೆಯನ್ನು ಕೊಟ್ಟಿದ್ದಾಗ ಮಾತ್ರವೇ ಸಂದರ್ಭಾನುಸಾರ ಪ್ರಬಂಧಕರ ಮಂಡಳಿ ಅಥವಾ ವ್ಯವಸ್ಥಾಪನಾ ಮಂಡಳಿ ಅಥವಾ ಯಾವುದೇ ಸಮಿತಿಯವರು ಕಾರ್ಯಸೂಚಿಯಲ್ಲಿ ಸೇರಿಸಬಹುದಾದ ಅಥವಾ ಸಭೆಯಲ್ಲಿ ಚರ್ಚೆಗೆ ತೆಗೆದುಕೊಂಡು ನಿರ್ಣಯವನ್ನು ಕೊಡಬಹುದಾದ ಎಲ್ಲಾ ವಿಷಯಗಳು ಮತ್ತು ಕಲಾಪಗಳು;

(ಸಿ) "ಪ್ರಬಂಧಕರ ಮಂಡಳಿ" ಎಂದರೆ, 24ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಪ್ರಬಂಧಕರ ಮಂಡಳಿ;

(ಡಿ) "ಕುಲಾಧಿಪತಿ", "ಕುಲಪತಿ", "ಸಹಕುಲಪತಿ" ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ ಮತ್ತು ಸಹಕುಲಪತಿ;

(ಇ) "ಕ್ಯಾಂಪಸ್" ಎಂದರೆ, ಅದು ಎಲ್ಲಾದರೂ ಇರಲಿ ವಿಶ್ವವಿದ್ಯಾಲಯವು ಸ್ಥಾಪಿಸಿದ, ನಿರ್ವಹಿಸುವ ಒಂದು ಕ್ಯಾಂಪಸ್;

(ಎಫ್) "ಸಮಿತಿಗಳು" ಎಂದರೆ, ಈ ಅಧಿನಿಯಮದಡಿಯಲ್ಲಿ ರೂಪಿಸಲಾದ ಸಮಿತಿಗಳು ಅಥವಾ ಸಂದರ್ಭಾನುಸಾರವಾಗಿ ವಿಶ್ವವಿದ್ಯಾಲಯದ ವಿವಿಧ ಕಾರ್ಯಕರ್ತರು ರಚಿಸಿರುವ ಸಮಿತಿಗಳು ಮತ್ತು ಅದರಲ್ಲಿ ಶೋಧನಾ ಸಮಿತಿ, ನಾಮನಿರ್ದೇಶನ ಸಮಿತಿ, ಹಣಕಾಸು ಸಮಿತಿ, ಹಣಕಾಸು ಪರಿಷತ್ತು ಮತ್ತು ಅಂಥ ಇತರ ಸಮಿತಿಗಳು ಒಳಗೊಳ್ಳುತ್ತವೆ;

(ಜಿ) "ಘಟಕ ಕಾಲೇಜು" ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುತ್ತಿರುವ ಒಂದು ಕಾಲೇಜು ಅಥವಾ ಸಂಸ್ಥೆ;

(ಹೆಚ್) "ಕಾರ್ಯಕಾರಿ ಪರಿಷತ್ತು" ಎಂದರೆ, 25ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ವಿಶ್ವವಿದ್ಯಾಲಯದ ಕಾರ್ಯಕಾರಿ ಪರಿಷತ್ತು;

(ಐ) "ಹಣಕಾಸು ಪರಿಷತ್ತು" ಎಂದರೆ, 28ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಹಣಕಾಸು ಸಮಿತಿ;

(ಜೆ) "ಸರ್ಕಾರ" ಎಂದರೆ, ಕರ್ನಾಟಕ ಸರ್ಕಾರ;

(ಕೆ) "ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳು" ಎಂದರೆ, ವಿಶ್ವವಿದ್ಯಾಲಯ ಅನುದಾನ ಆಯೋಗ, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು, ಭಾರತೀಯ ವೈದ್ಯಕೀಯ ಪರಿಷತ್ತು, ಭಾರತೀಯ ಔಷಧ ವಿಜ್ಞಾನ ಪರಿಷತ್ತು, ಭಾರತೀಯ ಕೃಷಿ ಸಂಶೋಧನಾ ಪರಿಷತ್ತು, ರಾಷ್ಟ್ರೀಯ ಮೌಲ್ಯಮಾಪನ ಮತ್ತು ಅಧಿಮಾನ್ಯತಾ ಪರಿಷತ್ತು, ರಾಷ್ಟ್ರೀಯ ಬೋಧಕ ಶಿಕ್ಷಣ ಪರಿಷತ್ತು, ದೂರಶಿಕ್ಷಣ ಪರಿಷತ್ತು, ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಪರಿಷತ್ತು ಮುಂತಾದ, ಉನ್ನತ ಶಿಕ್ಷಣದಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುವಂತೆ ನೋಡಿಕೊಳ್ಳುವುದಕ್ಕಾಗಿ ಗುಣಮಟ್ಟಗಳು ಮತ್ತು ಷರತ್ತುಗಳನ್ನು ವಿಧಿಸುವುದಕ್ಕಾಗಿ, ಕೇಂದ್ರ ಸರ್ಕಾರವು ಸ್ಥಾಪಿಸಿರುವ ಒಂದು ಸಂಸ್ಥೆ ಮತ್ತು ಇದರಲ್ಲಿ ಸರ್ಕಾರವೂ ಸೇರಿರುತ್ತದೆ;

(ಎಲ್) "ನಿಯಮಿಸಲಾದುದು" ಎಂದರೆ, ಈ ಅಧಿನಿಯಮದಡಿಯಲ್ಲಿ ಸರ್ಕಾರವು ರಚಿಸಲಾದ ನಿಯಮಗಳ ಮೂಲಕ ನಿಯಮಿಸಲಾದುದು;

(ಎಂ) "ಒಂದು ಘಟಕ ಕಾಲೇಜಿಗೆ ಸಂಬಂಧಪಟ್ಟಂತೆ ಪ್ರಾಂಶುಪಾಲರು" ಎಂದರೆ, ಘಟಕ ಕಾಲೇಜಿನ ಮುಖ್ಯಸ್ಥರು ಮತ್ತು ಪ್ರಾಂಶುಪಾಲರು ಇಲ್ಲದಿದ್ದಲ್ಲಿ ಅಥವಾ ನೇಮಕವಾದ ಪ್ರಾಂಶುಪಾಲರ

ಗೈರುಹಾಜರಿಯಲ್ಲಿ, ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ತಾತ್ಕಾಲಿಕವಾಗಿ ನೇಮಕಗೊಂಡಿರುವ ಉಪಪ್ರಾಂಶುಪಾಲರು ಅಥವಾ ಯಾವುದೇ ಇತರ ವ್ಯಕ್ತಿಯೂ ಇದರಲ್ಲಿ ಒಳಗೊಳ್ಳುತ್ತಾರೆ.

(ಎನ್) "ಕುಲಸಚಿವರು" ಎಂದರೆ, ವಿಶ್ವವಿದ್ಯಾಲಯದ ಕುಲಸಚಿವರು;

(ಒ) "ಪ್ರಾದೇಶಿಕ ಕೇಂದ್ರ" ಎಂದರೆ, ಯಾವುದೇ ಪ್ರದೇಶದಲ್ಲಿನ ಅಧ್ಯಯನ ಕೇಂದ್ರಗಳ ಕಾರ್ಯವನ್ನು ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ಮಾಡುವ ಉದ್ದೇಶಕ್ಕಾಗಿ ಮತ್ತು ಅಂಥ ಕೇಂದ್ರಕ್ಕೆ ಕಾರ್ಯಕಾರಿ ಪರಿಷತ್ತು ವಹಿಸಿಕೊಡಬಹುದಾದ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸುವುದಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಅಥವಾ ನಿರ್ವಹಿಸಿಕೊಂಡುಬರುವ ಒಂದು ಕೇಂದ್ರ;

(ಪಿ) ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ "ಪ್ರಾಯೋಜಕ ಪ್ರಾಧಿಕಾರ" ಅಥವಾ "ಪ್ರಾಯೋಜಕ ಸಂಸ್ಥೆ" ಎಂದರೆ, ನ್ಯಾಸ.

(ಕ್ಯೂ) "ರಾಜ್ಯ" ಎಂದರೆ, ಕರ್ನಾಟಕ ರಾಜ್ಯ;

(ಆರ್) "ಪರಿನಿಯಮಗಳು" ಮತ್ತು "ವಿನಿಯಮಗಳು" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಅನುಕ್ರಮವಾಗಿ ವಿಶ್ವವಿದ್ಯಾಲಯದ ಪರಿನಿಯಮಗಳು ಮತ್ತು ವಿನಿಯಮಗಳು;

(ಎಸ್) "ಅಧ್ಯಯನ ಕೇಂದ್ರ" ಎಂದರೆ, ವಿದ್ಯಾರ್ಥಿಗಳಿಗೆ ಅಗತ್ಯವಾದ ಬುದ್ಧಿವಾದ, ಸಲಹೆಗಳನ್ನು ನೀಡುವ ಅಥವಾ ಇತರ ಯಾವುದೇ ನೆರವನ್ನು ನೀಡುವ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಮತ್ತು ನಿರ್ವಹಿಸಿಕೊಂಡುಬಂದ ಒಂದು ಕೇಂದ್ರ;

(ಟಿ) "ಅಧ್ಯಾಪಕರು" ಎಂದರೆ, ಒಬ್ಬ ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಒಂದು ಘಟಕ ಕಾಲೇಜಿನಲ್ಲಿ ಬೋಧಿಸುವುದಕ್ಕೆ ಅಥವಾ ಸಂಶೋಧನೆ ನಡೆಸುವುದಕ್ಕೆ ಅಥವಾ ಸಂಶೋಧನೆಗೆ ಮಾರ್ಗದರ್ಶನ ನೀಡುವುದಕ್ಕೆ ನೇಮಕವಾದ ಅಂಥ ಇತರ ವ್ಯಕ್ತಿ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗವು ನಿಯಮಿಸಿದ ಗುಣಮಟ್ಟಗಳಿಗೆ ಅನುಸಾರವಾಗಿ ಇರುವ ಘಟಕ ಕಾಲೇಜಿನ ಪ್ರಾಂಶುಪಾಲರು ಇದರಲ್ಲಿ ಒಳಗೊಳ್ಳುತ್ತಾರೆ;

(ಯು) "ನ್ಯಾಸ" ಎಂದರೆ, ಕರ್ನಾಟಕ ಲಿಂಗಾಯಿತ ಎಜುಕೇಷನ್ ಸೊಸೈಟಿ, ಇದು ಒಂದು ನೋಂದಾಯಿತ ನ್ಯಾಸ ಮತ್ತು ಪ್ರಾಯೋಗಿಕ ಸಂಸ್ಥೆ;

(ವಿ) "ವಿಶ್ವವಿದ್ಯಾಲಯ ಅನುದಾನಗಳ ಆಯೋಗ" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) 4ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ಆಯೋಗ;

(ಡಬ್ಲ್ಯೂ) "ವಿಶ್ವವಿದ್ಯಾಲಯ" ಎಂದರೆ, ಈ ಅಧಿನಿಯಮದಡಿಯಲ್ಲಿ ಸ್ಥಾಪಿಸಿ ನಿಗಮಿತಗೊಳಿಸಲಾದ ಕೆಎಲ್ಇ ತಾಂತ್ರಿಕ ವಿಶ್ವವಿದ್ಯಾಲಯ;

(ಎಕ್ಸ್) "ಸಂದರ್ಶಕರು" ಎಂದರೆ, 13ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ವಿಶ್ವವಿದ್ಯಾಲಯದ ಸಂದರ್ಶಕರು

## ಅಧ್ಯಾಯ– II

## ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

3. **ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ**.– (1) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಹಕ್ಕನ್ನು ನ್ಯಾಸವು ಹೊಂದಿರತಕ್ಕದ್ದು.

(2) ನ್ಯಾಸವು ರಾಜ್ಯ ಸರ್ಕಾರಕ್ಕೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವವನ್ನು ಸಲ್ಲಿಸತಕ್ಕದ್ದು.

(3) ನ್ಯಾಸವು ಈ ಮುಂದಿನ ವಿವರಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ನ್ಯಾಸದ ವಿವರಗಳೊಂದಿಗೆ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು;

(ii) ವಿಶ್ವವಿದ್ಯಾಲಯದ ವ್ಯಾಪ್ತಿ ಮತ್ತು ಸ್ಥಾನಮಾನ ಹಾಗೂ ಭೂಮಿಯ ಲಭ್ಯತೆ;

(iii) ಪ್ರಾರಂಭದ ದಿನಾಂಕದಿಂದ ಸಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳಬೇಕೆಂದಿರುವ ಅಧ್ಯಯನ ಮತ್ತು ಸಂಶೋಧನಾ ಕಾರ್ಯಕ್ರಮಗಳ ಸ್ವರೂಪ ಮತ್ತು ಬಗೆಗಳು;

(iv) ಪ್ರಾರಂಭಿಸಬೇಕೆಂದು ಪ್ರಸ್ತಾಪಿಸಿರುವ ವ್ಯಾಸಂಗ ವಿಭಾಗಗಳು (ಫ್ಯಾಕಲ್ಟಿಗಳು), ಅಧ್ಯಯನ ಕ್ರಮಗಳು ಮತ್ತು ಸಂಶೋಧನೆಗಳ ಸ್ವರೂಪ;

(v) ಕಟ್ಟಡಗಳು, ಸಲಕರಣೆಗಳು ಮತ್ತು ರಚನಾ ಸೌಕರ್ಯಗಳನ್ನು ಒದಗಿಸುವಂಥ ಕ್ಯಾಂಪಸ್ ಅಭಿವೃದ್ಧಿ;

(vi) ಪ್ರಾರಂಭದ ದಿನಾಂಕದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಗಾಗಿ ಬಂಡವಾಳ ವೆಚ್ಚದ ಹಂತಗಳು;

(vii) ಬಾಬುವಾರು ಆವರ್ತಕ ವೆಚ್ಚ, ಆರ್ಥಿಕ ಮೂಲಗಳು ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ತಗಲುವ ಅಂದಾಜು ವೆಚ್ಚ;

(viii) ಸಂಪನ್ಮೂಲ ಸಂಗ್ರಹಣೆಗಾಗಿ ಯೋಜನೆ ಮತ್ತು ಅದಕ್ಕೆ ಬಂಡವಾಳದಿಂದ ತಗಲುವ ವೆಚ್ಚ ಹಾಗೂ ಪ್ರತಿಯೊಂದು ಮೂಲಕ್ಕೂ ಮರು ಸಂದಾಯ ಮಾಡುವ ರೀತಿ;

(ix) ವಿದ್ಯಾರ್ಥಿಗಳಿಂದ ಶುಲ್ಕ ವಸೂಲು ಮಾಡಿ ಆಂತರಿಕವಾಗಿ ನಿಧಿ ಸಂಗ್ರಹಿಸುವ ಯೋಜನೆ, ಸಲಹಾ ಸೇವೆ ಮತ್ತು ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಿಗೆ ಸಂಬಂಧಿಸಿದ ಇತರ ಚಟುವಟಿಕೆಗಳಿಂದ ನಿರೀಕ್ಷಿತ ವರಮಾನಗಳು ಮತ್ತು ಇತರ ನಿರೀಕ್ಷಿತ ವರಮಾನಗಳು;

(x) ಘಟಕವೊಂದಕ್ಕೆ ತಗಲುವ ವೆಚ್ಚದ ವಿವರಗಳು, ಆರ್ಥಿಕವಾಗಿ ದುರ್ಬಲವಾದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕ, ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿ ವೇತನದಲ್ಲಿ ನೀಡುವ ರಿಯಾಯಿತಿ ಅಥವಾ ವಿನಾಯತಿಯ ಪರಿಮಿತಿಯ ವಿವರಗಳನ್ನು ಮತ್ತು ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳಿಗೆ ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳು ಪ್ರಾಯೋಜಿಸಿದ ವಿದ್ಯಾರ್ಥಿಗಳಿಗೆ ಮತ್ತು ಭಾರತವನ್ನುಳಿದು ಇತರ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ವಿಧಿಸತಕ್ಕ ಶುಲ್ಕದ ದರಗಳು ಬೇರೆ ಬೇರೆ ಇದ್ದಲ್ಲಿ ಅವುಗಳನ್ನು ಸೂಚಿಸುವ ಶುಲ್ಕ ರಚನೆಯ ವಿವರಗಳು;

(xi) ಸಂಬಂಧಪಟ್ಟ ವಿದ್ಯಾ ವಿಭಾಗದಲ್ಲಿ ಎಷ್ಟು ವರ್ಷಗಳ ಅನುಭವ ಮತ್ತು ಪರಿಣಿತಿಯನ್ನು ನ್ಯಾಸವು ದೊರಕಿಸಿಕೊಡಲಿದೆ ಹಾಗೂ ಅದರ ಹಣಕಾಸಿನ ಸಂಪನ್ಮೂಲಗಳು;

(xii) ವಿಶ್ವವಿದ್ಯಾಲಯದಲ್ಲಿರುವ ಅಧ್ಯಯನ ಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕಾಗಿ ಇರುವ ವ್ಯವಸ್ಥೆ;

(xiii) ವಿಶ್ವವಿದ್ಯಾಲಯವು ಸ್ಥಾಪನೆಯಾಗುವುದಕ್ಕೆ ಮೊದಲು ನೆರವೇರಿಸಬೇಕೆಂದು ರಾಜ್ಯ ಸರ್ಕಾರವು ಅಗತ್ಯಪಡಿಸಬಹುದಾದ ಅಂಥ ಇತರ ಷರತ್ತುಗಳ ನೆರವೇರಿಕೆಯ ಹಂತ.

(4) ಸ್ವೀಕರಿಸಿದ ಪ್ರಸ್ತಾವಗಳನ್ನು ಪರೀಕ್ಷಿಸಲು ರಾಜ್ಯ ಸರ್ಕಾರವು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಪದನಿಮಿತ್ತ ಸದಸ್ಯರಾದ ಮೂರು ಸದಸ್ಯರುಗಳನ್ನು ಒಳಗೊಂಡ ಒಂದು ಪರಿಶೋಧನಾ ಸಮಿತಿಯನ್ನು ರಚಿಸತಕ್ಕದ್ದು ಮತ್ತು ಅದು ರಾಜ್ಯ ಸರ್ಕಾರಕ್ಕೆ ಶಿಫಾರಸ್ಸನ್ನು ಮಾಡತಕ್ಕದ್ದು.

4. ವಿಶ್ವವಿದ್ಯಾಲಯದ ಸ್ಥಾಪನೆ.– (1) ರಾಜ್ಯ ಸರ್ಕಾರವು ಪರಿಶೋಧನಾ ಸಮಿತಿಯು ಮಾಡಿದ ಶಿಫಾರಸ್ಸುಗಳನ್ನು ಪರಿಶೀಲಿಸಿದ ತರುವಾಯ ಮತ್ತು ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ,–

(i) ನ್ಯಾಸವು ಸಾಕಷ್ಟು ಮೂಲ ಸೌಕರ್ಯದೊಂದಿಗೆ ವಿಶ್ವವಿದ್ಯಾಲಯವೊಂದನ್ನು ನಡೆಸಲು ಸಮರ್ಥವಾಗಿದೆ ಎಂದು ಅದು ಮನಗಂಡರೆ;

(ii) ಪ್ರದೇಶಕ್ಕನುಸಾರವಾಗಿ ಕೆಳಗೆ ನಿರ್ದಿಷ್ಟ ಪಡಿಸಿದ ವ್ಯಾಪ್ತಿಗೆ ಭೂಮಿಯ ಒಡೆತನವನ್ನು ಹೊಂದಿರತಕ್ಕದ್ದು, ಎಂದರೆ:–

(ಎ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯೊಳಗಿದ್ದರ ಇಪ್ಪತ್ತೈದು ಎಕರೆಗಳು;

(ಬಿ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯಿಂದ ಹೊರಗೆ ಇದ್ದು, ಆದರೆ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಪ್ರದೇಶದ ಒಳಗೆ ಇದ್ದರೆ ನಲವತ್ತು ಎಕರೆಗಳು.

(ಸಿ) ಭೂಮಿಯು (ಎ) ಮತ್ತು (ಬಿ) ಖಂಡಗಳಲ್ಲಿ ನಿರ್ದಿಷ್ಟಪಡಿಸಿದ ಸ್ಥಳಗಳನ್ನು ಹೊರತುಪಡಿಸಿದ್ದರೆ ಅರವತ್ತು ಎಕರೆಗಳಿಗಿಂತ ಕಡಿಮೆ ಇರತಕ್ಕದ್ದಲ್ಲ.

ಮೇಲೆ ನಿರ್ದಿಷ್ಟಪಡಿಸಿದ ಭೂಮಿಯು ಏಕ ಘಟಕ(ಸಿಂಗಲ್ ಬ್ಲಾಕ್) ದಲ್ಲಿರತಕ್ಕದ್ದು ಮತ್ತು ಇದು ಸಂಬಂಧಪಟ್ಟ ಸೊಸೈಟಿ/ವಿಶ್ವವಿದ್ಯಾಲಯದ ಹೆಸರಿನಲ್ಲಿರತಕ್ಕದ್ದು. 3ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ಅಗತ್ಯಪಡಿಸಲಾದಂತೆ ಒದಗಿಸಿದ ವಿವರಗಳ ಆಧಾರದ ಮೇಲೆ ಸರ್ಕಾರವು 48ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಬೇಕೆಂದು ನ್ಯಾಸಕ್ಕೆ ನಿರ್ದೇಶನ ನೀಡಬಹುದು

(2) ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಸ್ಥಾಪನೆಯ ತರುವಾಯ, ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, "ಕೆಎಲ್ಇ ತಾಂತ್ರಿಕ ವಿಶ್ವವಿದ್ಯಾಲಯ" ಎಂಬ ಹೆಸರಿನ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ರಾಜ್ಯದಲ್ಲಿ ಸ್ಥಾಪಿಸುವುದಕ್ಕೆ ಮಂಜೂರಾತಿಯನ್ನು ನೀಡಬಹುದು.

(3) ವಿಶ್ವವಿದ್ಯಾಲಯದ ಕೇಂದ್ರ ಕಾರ್ಯಸ್ಥಾನವು ಬೆಳಗಾವಿಯಲ್ಲಿ ಇರತಕ್ಕದ್ದು. ವಿಶ್ವವಿದ್ಯಾಲಯವು ತನ್ನ ಕ್ಯಾಂಪಸ್ಸುಗಳನ್ನು ಅಥವಾ ಪ್ರಾದೇಶಿಕ ಕೇಂದ್ರಗಳನ್ನು, ಅಧ್ಯಯನ ಕೇಂದ್ರಗಳನ್ನು ಕರ್ನಾಟಕದ ಯಾವುದೇ ಭಾಗದಲ್ಲಿ ಹೊಂದಿರತಕ್ಕದ್ದು ಮತ್ತು ಆ ಬಗ್ಗೆ ರಾಜ್ಯ ಸರ್ಕಾರದ ಪೂರ್ವಾನುಮತಿಯನ್ನು ಪಡೆದುಕೊಳ್ಳುವುದಕ್ಕೊಳಪಟ್ಟು ಹಾಗೂ ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗನುಸಾರವಾಗಿ ಹೊಂದಿರತಕ್ಕದ್ದು.

(4) ಮೊದಲ ಕುಲಾಧಿಪತಿಯವರು, ಮೊದಲ ಕುಲಪತಿಯವರು, ಪ್ರಬಂಧಕ ಮಂಡಳಿಯ ಮೊದಲ ಸದಸ್ಯರುಗಳು, ವ್ಯವಸ್ಥಾಪನಾ ಮಂಡಳಿಯ ಹಾಗೂ ಶೈಕ್ಷಣಿಕ ಪರಿಷತ್ತಿನ ಮೊದಲ ಸದಸ್ಯರುಗಳು ಮತ್ತು ಇನ್ನು ಮುಂದೆ, ಅಂಥ ಅಧಿಕಾರಿಗಳು ಅಥವಾ ಸದಸ್ಯರುಗಳಾಗಬಹುದಾದಂಥ ಎಲ್ಲಾ ವ್ಯಕ್ತಿಗಳು, ಅಂಥ ಪದ ಅಥವಾ ಸದಸ್ಯತ್ವವನ್ನು ಹೊಂದಿರುವುದು ಮುಂದುವರೆಯುವವರೆಗೆ, ಒಂದು ನಿಗಮಿತ ನಿಕಾಯವನ್ನು ರಚಿಸತಕ್ಕದ್ದು. ಮತ್ತು ಅದು ವಿಶ್ವವಿದ್ಯಾಲಯದ ಹೆಸರಿನಲ್ಲಿ ದಾವೆ ಹೂಡಬಹುದು ಮತ್ತು ದಾವೆಗೊಳಗಾಗಬಹುದು.

(5) (2)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯವು ಸ್ಥಾಪನೆಗೆ ಮಂಜೂರಾತಿಯಾದ ಮೇಲೆ, ವಿಶ್ವವಿದ್ಯಾಲಯದ ಉದ್ದೇಶಕ್ಕಾಗಿ, ನ್ಯಾಸವು ಆರ್ಜಿಸಿದ, ಸೃಜಿಸಿದ, ಏರ್ಪಾಟು ಮಾಡಿಕೊಂಡ ಅಥವಾ ಕಟ್ಟಲ್ಪಟ್ಟ ಭೂಮಿ ಮತ್ತು ಇತರ ಸ್ಥಿರ ಮತ್ತು ಚರ ಸ್ವತ್ತು, ವಿಶ್ವವಿದ್ಯಾಲಯದಲ್ಲಿ ನಿಹಿತವಾಗಿರತಕ್ಕದ್ದು.

(6) ವಿಶ್ವವಿದ್ಯಾಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದ ಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂಥ ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

(7) ವಿಶ್ವವಿದ್ಯಾಲಯದಲ್ಲಿನ ಭೂಮಿ, ಕಟ್ಟಡ ಮತ್ತು ಇತರ ಸ್ವತ್ತುಗಳನ್ನು ವಿಶ್ವವಿದ್ಯಾಲಯದ ಉದ್ದೇಶಗಳಿಗೆ ಆನುಷಂಗಿಕವಾಗಿರುವುದನ್ನು ಹೊರತುಪಡಿಸಿ ಇತರ ಯಾವುದೇ ಉದ್ದೇಶಕ್ಕಾಗಿ ಬಳಸತಕ್ಕದ್ದಲ್ಲ.

5. **ಅನುದಾನಗಳು ಮತ್ತು ಹಣಕಾಸು ನೆರವು.**– ವಿಶ್ವವಿದ್ಯಾಲಯವು ಸ್ವಂತ ಧನಮೂಲ ಉಳ್ಳದ್ದಾಗಿರತಕ್ಕದ್ದು ಮತ್ತು ರಾಜ್ಯದಿಂದ ಅಥವಾ ರಾಜ್ಯದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಇತರ ಸಂಸ್ಥೆ ಅಥವಾ ನಿಗಮದಿಂದ ಯಾವುದೇ ನಿರ್ವಹಣಾ ಸಹಾಯ ಅನುದಾನ ಅಥವಾ ಯಾವುದೇ ಹಣಕಾಸು ನೆರವನ್ನು ಹಕ್ಕಿನಿಂದ ಕೇಳತಕ್ಕದ್ದಲ್ಲ ಅಥವಾ ಅದನ್ನು ಪಡೆಯಲು ಹಕ್ಕನ್ನು ಹೊಂದಿರತಕ್ಕದ್ದಲ್ಲ:

ಪರಂತು, ರಾಜ್ಯವು,–

(ಎ) ಇತರ ರಾಜ್ಯ ಸರ್ಕಾರದ ಸಂಘಟನೆಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿರುವಂಥದ್ದೇ ಸಂಶೋಧನೆ, ಅಭಿವೃದ್ಧಿ ಮತ್ತಿತರ ಚಟುವಟಿಕೆಗಳಿಗಾಗಿ; ಅಥವಾ

(ಬಿ) ಸರ್ಕಾರದಿಂದ ನೆರವನ್ನು ಪಡೆಯುವ ಯಾವುದೇ ನಿರ್ದಿಷ್ಟ ಸಂಶೋಧನೆ ಅಥವಾ ಕಾರ್ಯಕ್ರಮಗಳಿಗಾಗಿ; ಮತ್ತು

(ಸಿ) ರಾಜ್ಯ ಕಾರ್ಯನೀತಿಯ ಬದಲಾವಣೆಗೆ ಒಳಪಟ್ಟು ಅಥವಾ ಅನ್ಯಥಾ ಇದೇ ಬಗೆಯ ವಿಶ್ವವಿದ್ಯಾಲಯಗಳಿಗೆ ಅವಕಾಶವನ್ನು ಕಲ್ಪಿಸುವುದಕ್ಕೆ ಅಥವಾ ಅವುಗಳ ಪ್ರಯೋಜನಕ್ಕಾಗಿ.

– ಅನುದಾನದ ಮೂಲಕ ಅಥವಾ ಅನ್ಯಥಾ ಹಣಕಾಸು ಬೆಂಬಲವನ್ನು ಒದಗಿಸಬಹುದು:

ಮತ್ತು ಪರಂತು, ವಿಶ್ವವಿದ್ಯಾಲಯವು, ಯಾವುದೇ ಇತರ ಮೂಲದಿಂದ ಯಾವುದೇ ಆರ್ಥಿಕ ನೆರವನ್ನು ಸ್ವೀಕರಿಸಬಹುದು.

**6. ಘಟಕ ಕಾಲೇಜು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಅಥವಾ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದಕ್ಕೆ ಅಧಿಕಾರ.–** ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಐದು ವರ್ಷಗಳನ್ನು ಪೂರ್ಣಗೊಳಿಸಿದ ನಂತರ, ವಿಶ್ವವಿದ್ಯಾಲಯ ಅನುದಾನ ಆಯೋಗದ ಮತ್ತು ಇತರ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ಗುಣಮಟ್ಟಗಳಿಗೆ ಒಳಪಟ್ಟು, ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ, ವಿಶ್ವವಿದ್ಯಾಲಯವು, ರಾಜ್ಯದಲ್ಲಿ ತನಗೆ ಸೂಕ್ತವೆನಿಸುವಂಥ ಸ್ಥಳಗಳಲ್ಲಿ ಘಟಕ ಕಾಲೇಜುಗಳು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದಿರಬಹುದು.

**7. ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು.–** ವಿಶ್ವವಿದ್ಯಾಲಯವು, ತನ್ನ ಭವಿಷ್ಯದ್‌ದೃಷ್ಟಿ ಮತ್ತು ಧ್ಯೇಯೋದ್ದೇಶಗಳನ್ನು ಸಾಧಿಸಲು ಈ ಮುಂದಿನಂತೆ ವಿವಿಧ ಬಗೆಯ ಕಾರ್ಯತಂತ್ರಗಳನ್ನು ಕೈಗೊಳ್ಳಬಹುದು:–

(i) ತಾಂತ್ರಿಕತೆ, ಆರೋಗ್ಯ, ವ್ಯವಸ್ಥಾಪನೆ, ಜೀವ ವಿಜ್ಞಾನಗಳು ಮತ್ತು ಸಂಬಂಧಿತ ವಲಯಗಳಲ್ಲಿ ಸ್ನಾತಕೋತ್ತರ, ಡಾಕ್ಟೊರಲ್ ಮತ್ತು ಪೋಸ್ಟ್ ಡಾಕ್ಟೊರಲ್ ಕೋರ್ಸುಗಳಿಗೆ ಮುಂದುವರಿಯುವ ಮತ್ತು ಅವುಗಳನ್ನು ಒಳಗೊಳ್ಳುವ ವಿಶ್ವವಿದ್ಯಾಲಯ ಶಿಕ್ಷಣದಲ್ಲಿ ಪ್ರಗತಿಯನ್ನು ಮತ್ತು ಅನ್ವೇಷಣೆಯನ್ನು ಬೆಂಬಲಿಸುವುದು, ಪ್ರೋತ್ಸಾಹಿಸುವುದು ಮತ್ತು ಕೈಗೊಳ್ಳುವುದು ಹಾಗೂ ಈ ಕ್ಷೇತ್ರಗಳಲ್ಲಿ ಸಲಹೆಯನ್ನೂ ಒಳಗೊಂಡಂತೆ ಸಂಶೋಧನೆ, ಪ್ರಗತಿ ಮತ್ತು ಪ್ರಸಾರಕ್ಕೆ ಅವಕಾಶವನ್ನು ಕಲ್ಪಿಸುವುದು;

(ii) ವಿದ್ಯಾರ್ಥಿಗಳಿಗೆ, ಬೋಧಕ ವೃಂದದ (ಫ್ಯಾಕಲ್ಟಿ) ಸದಸ್ಯರಿಗೆ ಮತ್ತು ಇತರರಿಗೆ ನಿರ್ದಿಷ್ಟ ಶೈಕ್ಷಣಿಕ ಮತ್ತು ಸಂಶೋಧನಾ ಕಾರ್ಯಕ್ರಮಗಳನ್ನು, ತರಬೇತಿ ಕಾರ್ಯಕ್ರಮಗಳನ್ನು ಮತ್ತು ವಿನಿಮಯ ಕಾರ್ಯಕ್ರಮಗಳನ್ನು ಪರಿಕಲ್ಪಿಸಲು, ವಿನ್ಯಾಸಗೊಳಿಸಲು, ಅಭಿವೃದ್ಧಿಪಡಿಸಲು ಇತರ ಯಾವುದೇ ವಿಶ್ವವಿದ್ಯಾಲಯಗಳು, ಸಂಶೋಧನಾ ಸಂಸ್ಥೆಗಳು, ಲಾಭರಹಿತ ಸಂಸ್ಥೆಗಳು, ಕೈಗಾರಿಕಾ ಸಂಸ್ಥೆಗಳು, ವೃತ್ತಿಪರ ಸಂಸ್ಥೆಗಳು ಅಥವಾ ಇತರ ಸಂಸ್ಥೆಗಳೊಂದಿಗೆ ಸಹಯೋಗವನ್ನು ಹೊಂದುವುದು;

(iii) ರಾಜ್ಯ ಸರ್ಕಾರದ ಪೂರ್ವ ಅನುಮೋದನೆಯೊಡನೆ, ಯಾವುದೇ ಸಂಸ್ಥೆಯೊಂದಿಗೆ ಸಹಯೋಗ ಹೊಂದಿ ಸಂಶೋಧನೆಯನ್ನು ಮತ್ತು ಹೊಸತನವನ್ನು ಬೆಳಕಿಗೆ ತರುವುದು;

(iv) ತಾನು ಸೂಕ್ತವೆಂದು ಭಾವಿಸಬಹುದಾದಂತೆ, ಕಲಿಕೆಯ ಅಂಥ ಶಾಖೆಗಳಲ್ಲಿ ಬೋಧನಾ ಮತ್ತು ಸಂಶೋಧನಾ ಸೌಲಭ್ಯಗಳನ್ನು ಒದಗಿಸಿ ಜ್ಞಾನ ಪ್ರಸಾರ ಮಾಡುವುದು ಮತ್ತು ಅದನ್ನು ಮುಂದುವರೆಸುವುದು ಹಾಗೂ ವಿಶೇಷವಾಗಿ ತಾಂತ್ರಿಕ, ವ್ಯವಸ್ಥಾಪನೆ, ನೈಸರ್ಗಿಕ ಮತ್ತು ಸಂಬಂಧಿತ ಕೋರ್ಸುಗಳಲ್ಲಿ ಸಮಗ್ರ ವ್ಯಾಸಂಗ ವಿಷಯಗಳಿಗಾಗಿ ವಿಶೇಷ ಉಪಬಂಧ ಕಲ್ಪಿಸುವುದು ಮತ್ತು ವಿಶ್ವವಿದ್ಯಾಲಯದಲ್ಲಿ ಅಂತರವಿದ್ಯಾವಿಷಯಗಳ ಅಧ್ಯಯನ ಮತ್ತು ಸಂಶೋಧನೆಗೆ ಉತ್ತೇಜನ ನೀಡುವುದಕ್ಕಾಗಿ ಸೂಕ್ತ ಕ್ರಮ ಕೈಗೊಳ್ಳುವುದು;

(v) ಇಂಜಿನಿಯರಿಂಗ್ ಪರಿಹಾರಗಳನ್ನೊದಗಿಸುವ ಭವಿಷ್ಯದ ಸಮರ್ಥವಾದ ತಾಂತ್ರಿಕತೆಗಳ ಸಂಶೋಧನೆಯೊಂದಿಗೆ ಮತ್ತು ತಾಂತ್ರಿಕ ವ್ಯವಹಾರ ಮತ್ತು ಬೆಳೆಯುತ್ತಿರುವ ತಾಂತ್ರಿಕತೆಗೆ ಬೆಂಬಲದೊಂದಿಗೆ ಉನ್ನತ ತಾಂತ್ರಿಕ ಮತ್ತು ವೃತ್ತಿಪರ ಕೈಗಾರಿಕೆಗಳ ಬೇಡಿಕೆಗಳನ್ನು ಈಡೇರಿಸುವುದು;

(vi) ಉನ್ನತ ಕಲಿಕೆಗೆ ಪ್ರವೇಶಾವಕಾಶಗಳನ್ನು ಮತ್ತು ನ್ಯಾಯಸಮ್ಮತತೆಗೆ ಉತ್ತೇಜನ ನೀಡುವ ದೃಷ್ಟಿಯಿಂದ, ಕಲಿಕೆಯ ವಿಧಾನಗಳು ಮತ್ತು ಸ್ಥಳಗಳು, ವ್ಯಾಸಂಗ ಕ್ರಮಗಳ ಸಂಯೋಜನೆ, ದಾಖಲಾತಿಗಾಗಿ ಅರ್ಹತೆ, ಪ್ರವೇಶದ ವಯಸ್ಸು, ಪರೀಕ್ಷೆಯನ್ನು ನಡೆಸುವುದು ಮತ್ತು ಕಾರ್ಯಕ್ರಮಗಳ ನಿರ್ವಹಣೆಗೆ

ಸಂಬಂಧಿಸಿದಂತೆ ಸಮ್ಮತವಾದ (ಫ್ಲೆಕ್ಸಿಬಲ್) ಮತ್ತು ಮುಕ್ತವಾದ, ವಿಶ್ವವಿದ್ಯಾಲಯ ಮಟ್ಟದ ಶಿಕ್ಷಣ ಅನ್ವೇಷಣಾ ಪದ್ಧತಿಯನ್ನು ಅಳವಡಿಸುವುದು ಹಾಗೂ ಜ್ಞಾನದ ಹೊಸ ಕ್ಷೇತ್ರಗಳಲ್ಲಿ ಉತ್ಕೃಷ್ಟತೆಗೆ ಪ್ರೋತ್ಸಾಹಿಸುವುದು. ಶೈಕ್ಷಣಿಕ ಮತ್ತು ಸಮನ್ವಯ ಕಲಿಕೆ, ಇವೆರಡಕ್ಕೂ ಸಮನಾದ ಪ್ರಾಮುಖ್ಯತೆಯನ್ನು ನೀಡುವುದು.

(vii) ಗುಣಮಟ್ಟದ ಶಿಕ್ಷಣಕ್ಕಾಗಿ ಕೊಡುಗೆಯನ್ನು ನೀಡಲು ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಸಂಪನ್ಮೂಲ ಕೇಂದ್ರಗಳನ್ನು ಅಭಿವೃದ್ಧಿಪಡಿಸುವುದು;

(viii) ಕರ್ನಾಟಕದಲ್ಲಿ ವಿವಿಧ ಸ್ಥಳಗಳಲ್ಲಿ ಕ್ಯಾಂಪಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳು ಮತ್ತು ಸಂಯೋಜಿತ ಕಾಲೇಜುಗಳನ್ನು ಸ್ಥಾಪಿಸುವುದು ಮತ್ತು ತಾಂತ್ರಿಕತೆ, ವೃತ್ತಿಪರತೆ, ಸಾಮಾನ್ಯ ಶಿಕ್ಷಣ ಮತ್ತು ಸಮಾಜ ಮತ್ತು ಮಾನವ ಅಭಿವೃದ್ಧಿಯಲ್ಲಿ ಶೈಕ್ಷಣಿಕ ಬದಲಾವಣೆಗೆ ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಕೊಡುಗೆ ನೀಡುವುದು ಮತ್ತು ಜ್ಞಾನವನ್ನು ಅಭಿವೃದ್ಧಿಪಡಿಸುವುದು.

(ix) ಮೌಲ್ಯಮಾಪನದ ವಿವಿಧ ಆಧುನಿಕ ವಿಧಾನಗಳ ಮೂಲಕ ಮಾಡಿದ ಮೌಲ್ಯಮಾಪನಕ್ಕೆ ಅನುಸಾರವಾಗಿ ಶಿಕ್ಷಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದುದರ ಆಧಾರದ ಮೇಲೆ ನೀಡಲು ಪದವಿಗಳನ್ನು, ಡಿಪ್ಲೋಮೋಗಳನ್ನು, ಪ್ರಮಾಣಪತ್ರಗಳನ್ನು ಮತ್ತು ಯಶೋಪತ್ರ ಪ್ರದಾನದಂಥ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(x) ಉಪನ್ಯಾಸ ಮಾಲಿಕೆಗಳು, ವಿಚಾರ ಸಂಕಿರಣಗಳು, ಸಮ್ಮೇಳನಗಳು, ಕಾರ್ಯಾಂಗ ಶಿಕ್ಷಣ ಕಾರ್ಯಕ್ರಮಗಳು, ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳು, ಪ್ರಕಟಣೆಗಳು ಮತ್ತು ತರಬೇತಿ ಕಾರ್ಯಕ್ರಮಗಳು ಮತ್ತು ಕಾರ್ಯಸೂಚಿಗಳ ಮೂಲಕ ಜ್ಞಾನ ಪ್ರಸಾರ ಮಾಡುವುದು ಮತ್ತು ಶಿಕ್ಷಣ ಮತ್ತು ತತ್ಸಂಬಂಧಿತ ಅಭಿವೃದ್ಧಿ ಕ್ಷೇತ್ರಗಳ ವಿಷಯಗಳ ಬಗ್ಗೆ ಸಾರ್ವಜನಿಕ ಚರ್ಚೆಯನ್ನು ಏರ್ಪಡಿಸುವುದು;

(xi) ರಾಜ್ಯ ಸರ್ಕಾರದ ಪೂರ್ವ ಅನುಮತಿಯೊಂದಿಗೆ, ಉತ್ತಮ ಗುಣಮಟ್ಟದ ಇತರ ಯಾವುವೇ ವಿಶ್ವವಿದ್ಯಾಲಯಗಳೊಂದಿಗೆ ಸಹಭಾಗಿಗಳಾಗಿ ವಿಶ್ವವಿದ್ಯಾಲಯದ ಬೋಧಕ ವೃಂದ (ಫ್ಯಾಕಲ್ಟಿ) ಮತ್ತು ಸಂಶೋಧಕರ ಅಭಿವೃದ್ಧಿ ಮತ್ತು ತರಬೇತಿಗಾಗಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು;

(xii) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದಕ್ಕಾಗಿ ಮತ್ತು ಉತ್ತೇಜಿಸುವುದಕ್ಕಾಗಿ ಅವಶ್ಯಕವಾದ ಮತ್ತು ಯುಕ್ತವಾದ ಕ್ರಮಗಳನ್ನು ಕೈಗೊಳ್ಳುವುದು;

(xiii) ಭಾರತದಲ್ಲಿ ಶಿಕ್ಷಣ ಮತ್ತು ಇತರ ಅಭಿವೃದ್ಧಿ ವಲಯಗಳನ್ನು ವಿಸ್ತರಿಸುವುದಕ್ಕಾಗಿ ಸರ್ಕಾರವು ಅನುಮೋದಿಸಬಹುದಾದಂತೆ ಯಾವುವೇ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದು.

(xiv) ವಿಶ್ವವಿದ್ಯಾಲಯದಲ್ಲಿನ ಘಟಕ ಕಾಲೇಜುಗಳಲ್ಲಿ ಮತ್ತು ಕಾರ್ಯಕ್ರಮಗಳಲ್ಲಿ ಒಳಗೊಳ್ಳುವ ವಿದ್ಯಾರ್ಥಿಗಳ ಗುಣಮಟ್ಟವನ್ನು ಸುಧಾರಿಸುವುದಕ್ಕಾಗಿ ಪ್ರಾಯೋಜಕ ನ್ಯಾಸವು ನಡೆಸುವ ಶೈಕ್ಷಣಿಕ ಸಂಸ್ಥೆಗಳು ಮತ್ತು ಕಾರ್ಯಕ್ರಮಗಳಿಗೆ ಆರ್ಥಿಕವಾಗಿ ಅಥವಾ ಅನ್ಯಥಾ ಬೆಂಬಲಿಸುವುದು, ಅಭಿವೃದ್ಧಿಪಡಿಸುವುದು ಮಂಜೂರು ಮಾಡುವುದು, ನೆರವು ನೀಡುವುದು ಮತ್ತು ಮಾರ್ಗದರ್ಶನ ನೀಡುವುದು;

(xv) ಸಮಾಜದ ಸಾಮಾಜಿಕ ಮತ್ತು ಹಣಕಾಸಿನ ಕಾರಣದ ಬೆಂಬಲಕ್ಕೆ ವಿಶ್ವವಿದ್ಯಾಲಯಗಳಿಗಾಗಿ ವಿಶ್ವವಿದ್ಯಾಲಯದ ಅನುದಾನ ಆಯೋಗವು ಮಾಡಿರುವಂತೆ ಬೋಧನೆ ಮತ್ತು ಸಂಶೋಧನೆಯಷ್ಟೇ ಪ್ರಾಮುಖ್ಯತೆಯನ್ನು ವಿಸ್ತರಣೆಗೂ ನೀಡಲಾಗಿದ್ದು, ಈ ವಿಶ್ವವಿದ್ಯಾಲಯವು ವಿಶೇಷವಾಗಿ ಸ್ಥಳೀಯ ಸಮುದಾಯದ ಸಾಮಾಜಿಕ, ಆರ್ಥಿಕ, ಸಾಂಸ್ಕೃತಿಕ, ಪರಿಸರ, ನೀತಿ ಮತ್ತು ತಾತ್ವಿಕ ಮೌಲ್ಯಗಳ ಕ್ಷೇತ್ರಗಳಲ್ಲಿ ಮತ್ತು ಸಮಾಜಕ್ಕೆ ಸಾಮಾನ್ಯವಾಗಿ, ಆರ್ಥಿಕವಾಗಿ ಅಥವಾ ಅನ್ಯಥಾ ಬೆಂಬಲ, ಅಭಿವೃದ್ಧಿ, ನೆರವು ಮತ್ತು ಮಾರ್ಗದರ್ಶನವನ್ನು ನೀಡಲು ಸ್ಥಾಪಿತವಾಗಿದೆ.

8 ವಿಶ್ವವಿದ್ಯಾಲಯದ ಅಧಿಕಾರಗಳು – ವಿಶ್ವವಿದ್ಯಾಲಯವು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗೆ ಅನುಸಾರವಾಗಿ ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿರ್ಧರಿಸಬಹುದಾದಂತೆ ಕ್ಯಾಂಪಸ್ಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಕರ್ನಾಟಕದಲ್ಲಿ ಸ್ಥಾಪಿಸುವುದು ಮತ್ತು ನಿರ್ವಹಿಸುವುದು;

(ii) ವಿಶ್ವವಿದ್ಯಾಲಯದ ಉದ್ದೇಶವನ್ನು ಕಾರ್ಯರೂಪಕ್ಕೆ ತರುವಲ್ಲಿ ಅಗತ್ಯವಾಗಬಹುದಾದ ಅಥವಾ ಕಾರ್ಯಸಾಧ್ಯವಾಗಬಹುದಾದ ಎಲ್ಲಾ ಅಂಥ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು;

(iii) ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಮತ್ತು ಷರತ್ತುಗಳಿಗೊಳಪಟ್ಟು ಪದವಿಗಳು ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರದಾನಮಾಡುವುದು;

(iv) ಪರಿನಿಯಮಗಳನ್ವಯ ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿ ವೇತನಗಳು ಮತ್ತು ಬಹುಮಾನಗಳು, ಅವಾರ್ಡುಗಳು, ಪಾರಿತೋಷಕಗಳು ಇತ್ಯಾದಿಗಳನ್ನು ಸ್ಥಾಪಿಸುವುದು ಮತ್ತು ನೀಡುವುದು;

(v) ಪರಿನಿಯಮಗಳಲ್ಲಿ ಅಥವಾ ಸಂದರ್ಭಾನುಸಾರವಾಗಿ ನಿಯಮಗಳಲ್ಲಿ ನಿಗದಿಪಡಿಸಬಹುದಾದ ಅಂಥ ಶುಲ್ಕಗಳು, ಬಿಲ್ಲುಗಳು, ಖರೀದಿ ಪಟ್ಟಿಗಳನ್ನು ಕೇಳಿಪಡೆದುಕೊಳ್ಳುವುದು ಮತ್ತು ಸ್ವೀಕರಿಸುವುದು ಹಾಗೂ ಚಾರ್ಜುಗಳನ್ನು ವಸೂಲು ಮಾಡುವುದು;

(vi) ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಪಠ್ಯೇತರ ಚಟುವಟಿಕೆಗಳಿಗೆ ಅವಕಾಶಗಳನ್ನು ಕಲ್ಪಿಸುವುದು;

(vii) ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಕ್ಯಾಂಪಸುಗಳ, ಪ್ರಾದೇಶಿಕ ಕೇಂದ್ರಗಳ, ಅಧ್ಯಯನ ಕೇಂದ್ರಗಳ ಫ್ಯಾಕಲ್ಟಿ, ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವುದು;

(viii) ವಿಶ್ವವಿದ್ಯಾಲಯದ ಅಥವಾ ಒಂದು ಘಟಕ ಕಾಲೇಜಿನ ಅಥವಾ ಕ್ಯಾಂಪಸ್ಸಿನ, ಪ್ರಾದೇಶಿಕ ಕೇಂದ್ರದ, ಅಧ್ಯಯನ ಕೇಂದ್ರದ ಉದ್ದೇಶಕ್ಕಾಗಿ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದಿರುವ, ಯಾವುದೇ ರೀತಿಯ ಸ್ವಯಂ ದೇಣಿಗೆಗಳು ಮತ್ತು ಕೊಡುಗೆಗಳನ್ನು ಸ್ವೀಕರಿಸುವುದು ಮತ್ತು ನ್ಯಾಸ ಮತ್ತು ದತ್ತಿ ಸ್ವತ್ತುಗಳೂ ಸೇರಿದಂತೆ, ಯಾವುದೇ ಚರ ಅಥವಾ ಸ್ಥಿರ ಸ್ವತ್ತನ್ನು ಆರ್ಜಿಸುವುದು, ಹೊಂದಿರುವುದು, ನಿರ್ವಹಿಸುವುದು, ನಡೆಸುವುದು ಮತ್ತು ಹಸ್ತಾಂತರ ಮಾಡುವುದು;

(ix) ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸಿಕೊಂಡು ಬರುವುದು ಹಾಗೂ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ ವಿದ್ಯಾರ್ಥಿಗಳಿಗೆ ವಸತಿ ಸ್ಥಳಗಳಾಗಿ ಮಾನ್ಯತೆ ನೀಡುವುದು;

(x) ವಸತಿಯ ಮೇಲ್ವಿಚಾರಣೆ ಮಾಡುವುದು ಮತ್ತು ನಿಯಂತ್ರಣ ಮಾಡುವುದು ಹಾಗೂ ವಿದ್ಯಾರ್ಥಿಗಳು ಮತ್ತು ಎಲ್ಲಾ ಪ್ರವರ್ಗಗಳ ಸಿಬ್ಬಂದಿಗಳಲ್ಲಿ ಶಿಸ್ತು ನಿಯಂತ್ರಣ ಮಾಡುವುದು ಮತ್ತು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ನಡತೆ ಸಂಹಿತೆಯನ್ನು ರೂಪಿಸುವುದೂ ಒಳಗೊಂಡಂತೆ, ಅಂಥ ಸಿಬ್ಬಂದಿಗಳ ಸೇವಾಷರತ್ತುಗಳನ್ನು ನಿರೂಪಿಸುವುದು;

(xi) ಶೈಕ್ಷಣಿಕ, ಆಡಳಿತಾತ್ಮಕ ಮತ್ತು ಬೆಂಬಲ ಸಿಬ್ಬಂದಿಯ ಹುದ್ದೆಗಳನ್ನು ಮತ್ತು ಇತರ ಅವಶ್ಯ ಹುದ್ದೆಗಳನ್ನು ಸೃಜಿಸುವುದು;

(xii) ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ಉದ್ದೇಶಗಳಿಗಾಗಿ ಇತರ ವಿಶ್ವವಿದ್ಯಾಲಯಗಳೊಡನೆ ಸಹಕರಿಸುವುದು ಮತ್ತು ಸಹಯೋಗ ಹೊಂದುವುದು;

(xiii) ಶಿಕ್ಷಕರಿಗೆ, ಪಾಠಗಳನ್ನು ರಚಿಸುವವರಿಗೆ, ಮೌಲ್ಯಮಾಪಕರಿಗೆ ಮತ್ತಿತರ ಶೈಕ್ಷಣಿಕ ಸಿಬ್ಬಂದಿಗೆ ಪುನರ್ಮನನ ವ್ಯಾಸಂಗಕ್ರಮಗಳು, ಅಭಿಮುಖ ವ್ಯಾಸಂಗ ಕ್ರಮಗಳು, ಕಾರ್ಯಾಗಾರಗಳು, ವಿಚಾರಗೋಷ್ಠಿಗಳು ಮತ್ತಿತರ ಕಾರ್ಯಕ್ರಮಗಳನ್ನು ಏರ್ಪಡಿಸುವುದು ಮತ್ತು ನಡೆಸುವುದು;

(xiv) ಶೈಕ್ಷಣಿಕ ಪರಿಷತ್ತಿನ ಅನುಮೋದನೆಯೊಂದಿಗೆ ವಿಶ್ವವಿದ್ಯಾಲಯಕ್ಕೆ ಅಥವಾ ಘಟಕ ಕಾಲೇಜಿಗೆ, ಪ್ರಾದೇಶಿಕ ಕೇಂದ್ರಗಳಿಗೆ, ಅಧ್ಯಯನ ಕೇಂದ್ರಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮತ್ತು ಈ ಅಧಿನಿಯಮದಲ್ಲಿ ಕಲ್ಪಿಸಿದ

ವ್ಯಾಪ್ತಿಗಿಂತ ಕಡಿಮೆಯಿಲ್ಲದಂತೆ ಕರ್ನಾಟಕದ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮಾನಕ ಗುಣಮಟ್ಟಗಳನ್ನು ನಿರ್ಧರಿಸುವುದು.

(xv) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಕಾರ್ಯರೂಪಕ್ಕೆ ತರಲು ಅವಶ್ಯವಾಗಬಹುದಾದಂಥ ಇತರ ಎಲ್ಲಾ ಕ್ರಮಗಳನ್ನು ಅಥವಾ ಕಾರ್ಯಗಳನ್ನು, ಅವು ಮೇಲೆ ಹೇಳಿದ ಅಧಿಕಾರಗಳಿಗೆ ಪ್ರಾಸಂಗಿಕವಾಗಿರಲಿ ಅಥವಾ ಇಲ್ಲದಿರಲಿ, ಕೈಗೊಳ್ಳುವುದು;

(xvi) ಪರೀಕ್ಷೆಗಳ ಆಧಾರದ ಮೇಲೆ ಅಥವಾ ಸರ್ಕಾರದಿಂದ ಅನುಮೋದಿತವಾದ ಇತರ ಯಾವುದೇ ಮೌಲ್ಯಮಾಪನ ವಿಧಾನದ ಆಧಾರದ ಮೇಲೆ ನೀಡಲು ಪದವಿಗಳು, ಡಿಪ್ಲೋಮಾಗಳು, ಪ್ರಮಾಣಪತ್ರಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಸ್ಥಾಪಿಸುವುದು;

(xvii) ಫಿಲಂಗಳು, ಕ್ಯಾಸೆಟ್‌ಗಳು, ಧ್ವನಿಸುರುಳಿಗಳು, ದೃಶ್ಯಸುರುಳಿಗಳು, ಸಿ.ಡಿ., ವಿ.ಸಿ.ಡಿ. ಮತ್ತು ಇತರ ತಂತ್ರಾಂಶಗಳೂ ಹಾಗೂ ಇತರ ಸಂಬಂಧಿತ ವಿದ್ಯುನ್ಮಾನ ಮತ್ತು ಮುದ್ರಣ ಮಾಧ್ಯಮ ಸೇರಿದಂತೆ ಬೋಧಕ ಸಾಮಗ್ರಿಗಳನ್ನು ತಯಾರಿಸುವುದಕ್ಕಾಗಿ ಅವಕಾಶ ಕಲ್ಪಿಸುವುದು.

(xviii) ಪ್ರಬಂಧಕ ಮಂಡಳಿಯ ಅನುಮೋದನೆಯೊಡನೆ ವಿಶ್ವವಿದ್ಯಾಲಯದ ಉದ್ದೇಶಗಳಿಗಾಗಿ ವಿಶ್ವವಿದ್ಯಾಲಯದ ಸ್ವತ್ತುಗಳನ್ನು ಭದ್ರತೆಯಾಗಿ ನೀಡಿ ಅಥವಾ ನೀಡದೆ ಹಣವನ್ನು ಪಡೆಯುವುದು, ಸಂಗ್ರಹಿಸುವುದು, ಚಂದಾದಾರರಾಗುವುದು ಮತ್ತು ಸಾಲ ಪಡೆಯುವುದು;

(xix) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುದೇ ಇತರ ಶೈಕ್ಷಣಿಕ ಸಂಸ್ಥೆಗಳ ಆಡಳಿತವನ್ನು ವಶಪಡಿಸಿಕೊಳ್ಳುವುದು, ವಹಿಸಿಕೊಳ್ಳುವುದು ಮತ್ತು ನಡೆಸುವುದು;

(xx) ಕಾರ್ಯಕಾರಿ ಪರಿಷತ್ತು ಪೂರ್ವಾನುಮೋದನೆಯೊಂದಿಗೆ ಸ್ವತ್ತುಗಳನ್ನು ಅರ್ಜಿಸುವುದು;

(xxi) ವಿಶ್ವವಿದ್ಯಾಲಯದ ಮೇಲಿನ ಉದ್ದೇಶಗಳಿಗೆ ಸಂಬಂಧಿಸಿದ ಅಥವಾ ಪ್ರಾಸಂಗಿಕವಾದ ಯಾವುದೇ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು.

**9. ವಿಶ್ವವಿದ್ಯಾಲಯವು ಎಲ್ಲಾ ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲರಿಗೂ ಮುಕ್ತವಾಗಿರತಕ್ಕದ್ದು.–** ವಿಶ್ವವಿದ್ಯಾಲಯದ ಪ್ರವೇಶಗಳು ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲಾ ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು. ಎಲ್ಲಾ ಪ್ರವೇಶಗಳನ್ನು ಅರ್ಹತಾ ಪರೀಕ್ಷೆಗಳಲ್ಲಿನ ಅರ್ಹತೆಯ ಆಧಾರದ ಮೇಲೆ ಮಾಡತಕ್ಕದ್ದು:

ಪರಂತು, ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳ ಪ್ರವೇಶದಲ್ಲಿ ಶೇಕಡಾ ನಲವತ್ತರಷ್ಟನ್ನು ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ಮೀಸಲಿಡತಕ್ಕದ್ದು ಮತ್ತು ಪ್ರವೇಶಗಳನ್ನು ರಾಜ್ಯ ಸರ್ಕಾರವು ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡತಕ್ಕದ್ದು ಮತ್ತು ಸೀಟುಗಳನ್ನು ಅರ್ಹತೆ ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ರೂಪಿಸುವ ಮೀಸಲಾತಿ ನೀತಿಗೆ ಅನುಸಾರವಾಗಿ ಹಂಚಿಕೆ ಮಾಡತಕ್ಕದ್ದು:

ಮತ್ತು ಪರಂತು, ಯಾವುದೇ ಕೋರ್ಸಿನಲ್ಲಿ ಹತ್ತಕ್ಕಿಂತ ಕಡಿಮೆ ಸೀಟುಗಳು ಇರುವಲ್ಲಿ, ಸ್ನಾತಕೋತ್ತರ ಇಂಥ ಕೋರ್ಸುಗಳನ್ನು ಒಟ್ಟಿಗೆ ಒಂದುಗೂಡಿಸುವ ಮೂಲಕ ಮೀಸಲಿಡತಕ್ಕದ್ದು ಮತ್ತು ಯಾವುದೇ ಕೋರ್ಸಿನಲ್ಲಿ ಮೂರು ಸೀಟುಗಳಿಗಿಂತ ಕಡಿಮೆ ಇರುವಲ್ಲಿ, ಅವುಗಳನ್ನು ಸರದಿ ಸುತ್ತಿನಲ್ಲಿ ಮೀಸಲಿಡತಕ್ಕದ್ದು.

**10. ರಾಷ್ಟ್ರೀಯ ಅಧಿಮಾನ್ಯತೆ.–** ವಿಶ್ವವಿದ್ಯಾಲಯವು ಪ್ರಾರಂಭವಾದ ತರುವಾಯ ಆದಷ್ಟು ಬೇಗನೆ ಸಂಬಂಧಪಟ್ಟ ಶಾಸನಾತ್ಮಕ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳಿಂದ ಅಧಿಮಾನ್ಯತೆಯನ್ನು ಕೋರತಕ್ಕದ್ದು ಮತ್ತು ಖಾಸಗಿ ವಿಶ್ವವಿದ್ಯಾಲಯಗಳು ನಡೆಸುವ ಎಲ್ಲಾ ವ್ಯಾಸಂಗ ಕ್ರಮಗಳು ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ವಿನಿಯಮಗಳಿಗೆ ಅನುಸಾರವಾಗಿ ಇರತಕ್ಕದ್ದು.

**11. ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು.–** ಪ್ರಾಯೋಜಕ ಸಂಸ್ಥೆಯು ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದಂತೆ ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಇವುಗಳಲ್ಲಿ ಪ್ರತಿಯೊಂದನ್ನು ಪ್ರಾಯೋಜಕ ಸಂಸ್ಥೆಯು ತನ್ನ ವಿವೇಚನಾನುಸಾರ ಚಲಾಯಿಸಬಹುದು, ಎಂದರೆ:-

(i) ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಮನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು:

(ii) ಸಹ-ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಮನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು:

(iii) ವಿಶ್ವವಿದ್ಯಾಲಯದ ಪ್ರಥಮ ಪ್ರಬಂಧಕ ಮಂಡಳಿಯನ್ನು ರಚಿಸುವುದು;

(iv) ಪ್ರಬಂಧಕ ಮಂಡಳಿಯ ಅಧ್ಯಕ್ಷರನ್ನು ನಾಮನಿರ್ದೇಶಿಸುವುದು;

(v) ಪ್ರಬಂಧಕ ಮಂಡಳಿಯ ಸದಸ್ಯರಾಗಿ ಮೂರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(vi) ಕಾರ್ಯಕಾರಿ ಪರಿಷತ್ತಿನ ಸದಸ್ಯರಾಗಿ ಇಬ್ಬರು ವ್ಯಕ್ತಿಗಳನ್ನು ನಾಮ ನಿರ್ದೇಶಿಸುವುದು;

(vii) ವಿಶ್ವವಿದ್ಯಾಲಯದ ದತ್ತಿ ನಿಧಿಗೆ ದೇಣಿಗೆ ನೀಡಲು ನಿಧಿ ಮೂಲಗಳನ್ನು ನಿರ್ಧರಿಸುವುದು;

(viii) ವಿಶ್ವವಿದ್ಯಾಲಯದ ಹಣದ ವಿನಿಯೋಗ ಮತ್ತು ವೆಚ್ಚ ಮಾಡುವುದನ್ನು ನಿರ್ಧರಿಸುವುದು;

(ix) ಈ ಅಧಿನಿಯಮದಲ್ಲಿ ಉಪಬಂಧಿಸಿರುವ ವಿಧಾನದಲ್ಲಿ ಪ್ರಬಂಧಕ ಮಂಡಳಿಯ ಸಭೆಯಲ್ಲಿಯ ವಿವಾದಗಳನ್ನು ಬಗೆಹರಿಸುವುದು;

## ಅಧ್ಯಾಯ-III

## ವಿಶ್ವವಿದ್ಯಾಲಯದ ಅಧಿಕಾರಿಗಳು

**12. ವಿಶ್ವವಿದ್ಯಾಲಯದ ಅಧಿಕಾರಿಗಳು.–** ಈ ಮುಂದಿನವರು ವಿಶ್ವವಿದ್ಯಾಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:–

(i) ಸಂದರ್ಶಕರು;

(ii) ಸಹ-ಸಂದರ್ಶಕರು;

(iii) ಕುಲಾಧಿಪತಿಗಳು;

(iv) ಸಹಕುಲಾಧಿಪತಿಗಳು;

(v) ಕುಲಪತಿಗಳು;

(vi) ಸಹಕುಲಪತಿಗಳು;

(vii) ಕುಲಸಚಿವರು;

(viii) ಹಣಕಾಸು ಅಧಿಕಾರಿ; ಮತ್ತು

(ix) ಪರಿನಿಯಮಗಳ ಮೂಲಕ ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಘೋಷಿಸಬಹುದಾದಂಥ ಇತರ ಅಧಿಕಾರಿಗಳು.

**13. ಸಂದರ್ಶಕರು.–** (1) ಕರ್ನಾಟಕದ ಘನತೆವೆತ್ತ ರಾಜ್ಯಪಾಲರು ವಿಶ್ವವಿದ್ಯಾಲಯದ ಸಂದರ್ಶಕರಾಗಿರತಕ್ಕದ್ದು ಮತ್ತು ಸಂದರ್ಶಕರು ವಿಶ್ವವಿದ್ಯಾಲಯದ ಕಾರ್ಯನಿರ್ವಹಣೆಯ ಸುಧಾರಣೆಗಾಗಿ ಸಲಹೆಗಳನ್ನು ನೀಡಬಹುದು.

(2) ಸಂದರ್ಶಕರು, ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಸಂದರ್ಶಕರು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ವ್ಯವಹಾರಗಳಿಗೆ ಸಂಬಂಧಿಸಿದಂತೆ, ಯಾವುದೇ ಪತ್ರ ಅಥವಾ ಮಾಹಿತಿಯನ್ನು ತರಿಸಿಕೊಳ್ಳುವುದು.

(ii) ಸಂದರ್ಶಕರು, ಅವರು ಸ್ವೀಕರಿಸಿದ ಮಾಹಿತಿಯ ಆಧಾರದ ಮೇಲೆ ವಿಶ್ವವಿದ್ಯಾಲಯಗಳ ಯಾವುದೇ ಪ್ರಾಧಿಕಾರವು ಮಾಡಿದ ಯಾವುದೇ ಆದೇಶ, ನಡೆಸಿದ ವ್ಯವಹರಣೆಗಳು ಅಥವಾ ಕೈಗೊಂಡ ತೀರ್ಮಾನಗಳು, ಈ ಅಧಿನಿಯಮ, ಪರಿನಿಯಮಗಳು ಅಥವಾ ನಿಯಮಗಳಿಗೆ ಪೂರಕವಾಗಿಲ್ಲವೆಂದು ಮನಗಂಡರೆ ಅವರು ವಿಶ್ವವಿದ್ಯಾಲಯದ ಹಿತಾಸಕ್ತಿಯಿಂದ ತಾವು ಸೂಕ್ತವೆಂದು ಭಾವಿಸಬಹುದಾದಂಥ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಹಾಗೆ ಹೊರಡಿಸಿದ ನಿರ್ದೇಶನಗಳನ್ನು ಸಂಬಂಧಪಟ್ಟವರೆಲ್ಲರೂ ಪಾಲಿಸತಕ್ಕದ್ದು.

14. ಸಹ-ಸಂದರ್ಶಕರು.- (1) ಕರ್ನಾಟಕ ಸರ್ಕಾರದ ಮಾನ್ಯ ಉನ್ನತ ಶಿಕ್ಷಣ ಸಚಿವರು ವಿಶ್ವವಿದ್ಯಾಲಯದ ಸಹ-ಸಂದರ್ಶಕರಾಗಿರತಕ್ಕದ್ದು.

(2) ಸಂದರ್ಶಕರ ಅನುಪಸ್ಥಿತಿಯಲ್ಲಿ ಸಹ-ಸಂದರ್ಶಕರು ಪದವಿಗಳನ್ನು ಮತ್ತು ಡಿಪ್ಲೋಮಾಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

15. ಕುಲಾಧಿಪತಿಗಳು.- (1) ಕುಲಾಧಿಪತಿಯವರನ್ನು ಪ್ರಾಯೋಜಕ ಸಂಸ್ಥೆಯು ನೇಮಿಸತಕ್ಕದ್ದು.

(2) ಪ್ರಾಯೋಜಕ ಸಂಸ್ಥೆಯ ಪ್ರಸ್ತುತ ಅಧ್ಯಕ್ಷರು ಮೊದಲನೇ ಕುಲಾಧಿಪತಿಗಳಾಗಿರತಕ್ಕದ್ದು, ಅವರು ತಮ್ಮ ಜೀವನಪರ್ಯಂತ ಅಥವಾ ಅವರು ತಮ್ಮ ಪದವನ್ನು ಬಿಟ್ಟುಕೊಡುವವರೆಗೆ ಕುಲಾಧಿಪತಿಗಳಾಗಿ ಪದಧಾರಣ ಮಾಡಿರತಕ್ಕದ್ದು.

(3) ತದನಂತರದ ಕುಲಾಧಿಪತಿಗಳು, ಅಂಥ ನೇಮಕಾತಿಯನ್ನು ಪರಿಗಣಿಸುವ ಸಂದರ್ಭದಲ್ಲಿ ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ, ಪ್ರಾಯೋಜಕ ಸಂಸ್ಥೆಯ ನ್ಯಾಸಧಾರಿಯಾಗಿರತಕ್ಕದ್ದು ಅಥವಾ ಶಿಕ್ಷಣ, ವಿಜ್ಞಾನ, ಸಂಸ್ಕೃತಿ ಅಥವಾ ಸಾರ್ವಜನಿಕ ಜೀವನ ಕ್ಷೇತ್ರಗಳಲ್ಲಿ ರಾಷ್ಟ್ರೀಯ ಮಟ್ಟದ ಛಾಪನ್ನು ಪಡೆದಿರುವ ಅಂಥ ಇತರ ವ್ಯಕ್ತಿಯಾಗಿರತಕ್ಕದ್ದು.

(4) ಹಾಗೆ ನೇಮಕಗೊಂಡ ತದನಂತರದ ಕುಲಾಧಿಪತಿಗಳು ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ಪದಧಾರಣ ಮಾಡತಕ್ಕದ್ದು.

(5) ಕುಲಾಧಿಪತಿಗಳು ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳ ಅಡಿಯಲ್ಲಿ ಅವರಿಗೆ ಪ್ರದಾನ ಮಾಡಬಹುದಾದಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು, ಅವುಗಳಲ್ಲಿ ಈ ಮುಂದಿನ ಅಧಿಕಾರಗಳು ಒಳಗೊಂಡಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುವುದು;

(ii) ಸಂದರ್ಶಕರ ಮತ್ತು ಸಹ-ಸಂದರ್ಶಕರಿಬ್ಬರ ಗೈರುಹಾಜರಿಯಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಘಟಿಕೋತ್ಸವಗಳಲ್ಲಿ ಅಧ್ಯಕ್ಷತೆಯನ್ನು ವಹಿಸುವುದು;

(iii) ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವುದು;

(iv) ಈ ಅಧಿನಿಯಮ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಅನುಸಾರವಾಗಿ ಕುಲಪತಿಗಳನ್ನು ನೇಮಿಸುವುದು ಅಥವಾ ಪುನರ್ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(v) ಈ ಅಧಿನಿಯಮದ 16ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ನಾಮನಿರ್ದೇಶಕ ಸಮಿತಿಯ ಸದಸ್ಯರಾಗಿ ಒಬ್ಬ ವ್ಯಕ್ತಿಯನ್ನು ನಾಮನಿರ್ದೇಶನ ಮಾಡುವುದು;

(vi) ಸಹಕುಲಪತಿಗಳು, ಡೀನ್, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿಗಳ ನೇಮಕಾತಿಯನ್ನು ಪೂರ್ವಾನುಮೋದಿಸುವುದು;

(vii) ಪ್ರಬಂಧಕ ಮಂಡಳಿಯ ಸದಸ್ಯರನ್ನಾಗಿ ಇಬ್ಬರು ಶಿಕ್ಷಣ ತಜ್ಞರನ್ನು ನಾಮನಿರ್ದೇಶಿಸುವುದು;

(viii) ಮೊದಲ ಸಹಕುಲಪತಿಗಳು ಮತ್ತು ಹಣಕಾಸು ಅಧಿಕಾರಿಗಳನ್ನು ನೇಮಿಸುವುದು;

(ix) ಮೊದಲ ವ್ಯವಸ್ಥಾಪನಾ ಮಂಡಳಿ, ಹಣಕಾಸು ಸಮಿತಿ, ಸಂಶೋಧನಾ ಪರಿಷತ್ತು ಹಾಗೂ ಶೈಕ್ಷಣಿಕ ಪರಿಷತ್ತುಗಳನ್ನು ರಚಿಸುವುದು;

(x) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ ಕಾರ್ಯಸೂಚಿ ವಿಷಯಗಳನ್ನು ಪೂರ್ವಾನುಮೋದಿಸುವುದು;

(xi) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ (ಪ್ರಬಂಧಕ ಮಂಡಳಿಯ ಸಭೆಯಲ್ಲಿ ಉಂಟಾದ ವಿವಾದಗಳನ್ನು ಹೊರತುಪಡಿಸಿ) ವಿವಾದಗಳನ್ನು ಪರಿಹರಿಸುವುದು.

(6) ಪದಾಧಿಕಾರಿ ಅಥವಾ ಸಂಸ್ಥೆ ಮತ್ತು ವಿಶ್ವವಿದ್ಯಾಲಯದ ಯಾವುದೇ ಇತರ ಪದಾಧಿಕಾರಿ ಅಥವಾ ಸಂಸ್ಥೆಯ ನಡುವೆ ವಿವಾದಗಳು ಉಂಟಾದಲ್ಲಿ, ಆ ವಿವಾದವನ್ನು ಕುಲಾಧಿಪತಿಯವರ ಪರ್ಯಾಲೋಚನೆಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿವಾದದ ಸಂದರ್ಭದಲ್ಲಿ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

16. **ಸಹಕುಲಾಧಿಪತಿಗಳು.–** ಸಹಕುಲಾಧಿಪತಿಯವರನ್ನು, ಕುಲಾಧಿಪತಿಯವರು ಶಾಸನಗಳ ಮೂಲಕ ಹೇಳಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ನೇಮಕ ಮಾಡತಕ್ಕದ್ದು. ಸಹಕುಲಾಧಿಪತಿಗಳು, ಕುಲಾಧಿಪತಿಯವರು ಅಗತ್ಯಪಡಿಸಬಹುದಾದ ಅಂಥ ಎಲ್ಲಾ ವಿಷಯಗಳಲ್ಲಿ ಕುಲಾಧಿಪತಿಯವರಿಗೆ ನೆರವು ನೀಡತಕ್ಕದ್ದು. ಸಹಕುಲಾಧಿಪತಿಯವರ ಕರ್ತವ್ಯಗಳು ಮತ್ತು ಹೊಣೆಗಾರಿಕೆಗಳು ಶಾಸನಗಳ ಮೂಲಕ ಹೇಳಲಾದಂತೆ ಇರತಕ್ಕದ್ದು.

17. **ಕುಲಪತಿಗಳು.–** (1) (2)ನೇ ಉಪಪ್ರಕರಣದ ಉಪಬಂಧಗಳಿಗೆ ಅನುಸಾರವಾಗಿ ನಾಮನಿರ್ದೇಶಕ ಸಮಿತಿಯು ಶಿಫಾರಸ್ಸು ಮಾಡಿದ ಮೂರು ವ್ಯಕ್ತಿಗಳ ಪೈಕಿಯಿಂದ ಒಬ್ಬರನ್ನು ಮೂರು ವರ್ಷಗಳ ಅವಧಿಗಾಗಿ ಕುಲಪತಿಗಳನ್ನಾಗಿ, ಪರಿನಿಯಮಗಳಲ್ಲಿ ನಿಯಮಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರು ನೇಮಿಸತಕ್ಕದ್ದು. ಮೂರು ವರ್ಷಗಳ ಅವಧಿಯು ಮುಗಿದ ತರುವಾಯ, ಇದನ್ನು ಮೂರು ವರ್ಷಗಳ ಮತ್ತೊಂದು ಅವಧಿಗೆ ನವೀಕರಿಸಬಹುದು:

ಪರಂತು, ಕುಲಪತಿಯವರು, ತಮ್ಮ ಅವಧಿ ಮುಗಿದ ನಂತರವೂ ಹೊಸ ಕುಲಪತಿಯವರು ಸೇರಿಕೊಳ್ಳುವವರೆಗೆ ಪದದಲ್ಲಿ ಮುಂದುವರೆಯತಕ್ಕದ್ದು. ಆದಾಗ್ಯೂ ಈ ಅವಧಿಯು ಯಾವುದೇ ಸಂದರ್ಭದಲ್ಲಿ ಒಂದು ವರ್ಷವನ್ನು ಮೀರತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಹೇಳಿರುವ ನಾಮನಿರ್ದೇಶಕ ಸಮಿತಿಯಲ್ಲಿ ಈ ಮುಂದಿನ ವ್ಯಕ್ತಿಗಳು ಇರತಕ್ಕದ್ದು, ಎಂದರೆ:-

(i) ಕುಲಾಧಿಪತಿಯವರು ನಾಮನಿರ್ದೇಶಿಸಿದ ಒಬ್ಬ ವ್ಯಕ್ತಿ;

(ii) ಪ್ರಬಂಧಕ ಮಂಡಳಿಯ ಇಬ್ಬರು ನಾಮ ನಿರ್ದೇಶಿತರು, ಇವರಲ್ಲಿ ಒಬ್ಬರನ್ನು ಪ್ರಬಂಧಕ ಮಂಡಳಿಯು ಸಮಿತಿಯ ಸಂಚಾಲಕರೆಂದು ನಾಮನಿರ್ದೇಶಿಸತಕ್ಕದ್ದು.

(3) ಶೋಧನಾ ಸಮಿತಿಯು, ಅರ್ಹತೆಯ ಆಧಾರದ ಮೇಲೆ ಕುಲಪತಿಯ ಹುದ್ದೆಗೆ ಸೂಕ್ತವಾದ ಮೂರು ವ್ಯಕ್ತಿಗಳ ಹೆಸರನ್ನು ಶಿಫಾರಸ್ಸು ಮಾಡತಕ್ಕದ್ದು ಮತ್ತು ಅದನ್ನು ಪ್ರತಿಯೊಬ್ಬ ವ್ಯಕ್ತಿಯ ವಿದ್ಯಾರ್ಹತೆ ಮತ್ತಿತರ ವಿಶಿಷ್ಟ ಪ್ರಶಸ್ತಿಗಳನ್ನು ತಿಳಿಸುವ ಒಂದು ಸಂಕ್ಷಿಪ್ತ ವರದಿಯೊಂದಿಗೆ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು.

(4) ಕುಲಪತಿಯವರು ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಾಹಕ ಮತ್ತು ಶೈಕ್ಷಣಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣವನ್ನು ಚಲಾಯಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯದ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೊಳಿಸತಕ್ಕದ್ದು:

ಪರಂತು, ಶಿಕ್ಷಕರ ನೇಮಕಾತಿಯನ್ನು ಹೊರತುಪಡಿಸಿ ಕೂಡಲೇ ಕ್ರಮವನ್ನು ಕೈಗೊಳ್ಳಬೇಕಾದ ತುರ್ತು ಸ್ವರೂಪದ ಯಾವುದೇ ಇತರ ವಿಷಯಗಳಲ್ಲಿ ಮತ್ತು ಅದನ್ನು ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ವಿಶ್ವವಿದ್ಯಾಲಯವು ಇದಕ್ಕಾಗಿ ಅಧಿಕೃತಗೊಳಿಸಿದ್ದ ಯಾವೊಬ್ಬ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ಇತರ ಸಂಸ್ಥೆಯು ಕೂಡಲೇ ಕ್ರಮಕೈಗೊಳ್ಳುವುದು ಸಾಧ್ಯವಿರದಿರುವಾಗ ಕುಲಪತಿಯವರು ತಾನು ಸೂಕ್ತವೆಂದು ಭಾವಿಸಬಹುದಾದಂತಹ ಕ್ರಮವನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆದು ಕೈಗೊಳ್ಳತಕ್ಕದ್ದು.

(5) ಕುಲಪತಿಯವರು ಪರಿನಿಯಮಗಳು ಅಥವಾ ನಿಯಮಗಳಲ್ಲಿ ಹೇಳಲಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು:

ಪರಂತು, ಕುಲಪತಿಗಳ ಅಭಿಪ್ರಾಯದಲ್ಲಿ, ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಯಾವುದೇ ನಿರ್ಣಯವು, ಈ ಅಧಿನಿಯಮ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳು, ವಿನಿಯಮಗಳು ಅಥವಾ ನಿಯಮಗಳ ಮೂಲಕ ಪ್ರದತ್ತವಾದ ಅಧಿಕಾರದ ಹೊರಗಿದ್ದರೆ ಅಥವಾ ವಿಶ್ವವಿದ್ಯಾಲಯದ ಹಿತಾಸಕ್ತಿಗೆ ಪ್ರತಿಕೂಲವಾಗಬಹುದಾಗಿದ್ದರೆ, ಅದರ ನಿರ್ಣಯದ ದಿನಾಂಕದಿಂದ ಹದಿನೈದು ದಿನಗಳ ಒಳಗೆ ತನ್ನ ನಿರ್ಣಯವನ್ನು ಪರಿಷ್ಕರಿಸಲು ಸಂಬಂಧಪಟ್ಟ ಪ್ರಾಧಿಕಾರವನ್ನು ಆತನು ಕೋರತಕ್ಕದ್ದು ಮತ್ತು ಪ್ರಾಧಿಕಾರವು ಅಂಥ ನಿರ್ಣಯವನ್ನು ಸಂಪೂರ್ಣವಾಗಿ ಅಥವಾ ಭಾಗಶ:ವಾಗಿ ಪರಿಷ್ಕರಿಸಲು ನಿರಾಕರಿಸಿದ ಸಂದರ್ಭದಲ್ಲಿ ಅಥವಾ ಹದಿನೈದು ದಿನಗಳೊಳಗೆ ಯಾವುದೇ ನಿರ್ಣಯವನ್ನು ತೆಗೆದುಕೊಳ್ಳಲು ವಿಫಲವಾದಲ್ಲಿ, ನಂತರ ಅಂಥ ವಿಷಯವನ್ನು ಕುಲಾಧಿಪತಿಗಳಿಗೆ ಕಳುಹಿಸತಕ್ಕದ್ದು ಮತ್ತು ಈ ಬಗ್ಗೆ ಇವರ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

(6) ಕುಲಪತಿಯವರ ಸೇವೆಗಳನ್ನು, ಪ್ರಬಂಧಕ ಮಂಡಳಿಯ ಅನುಮೋದನೆಯೊಂದಿಗೆ ಮತ್ತು ಸಹಜ ನ್ಯಾಯದ ತತ್ವಗಳನ್ನು ಅನುಸರಿಸಿದ ನಂತರ ಹಾಗೂ ಶಿಸ್ತಿನ ಆಧಾರದ ಮೇಲೆ ಅಂತ್ಯಗೊಳಿಸುವ ಸಂದರ್ಭವೂ ಸೇರಿದಂತೆ, ಪ್ರಕರಣದ ಬಗ್ಗೆ ಕುಲಪತಿಯು ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡಿದ ತರುವಾಯ, ಕುಲಾಧಿಪತಿಯವರು ಅಂತ್ಯಗೊಳಿಸಬಹುದು.

(7) ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಸಂದರ್ಶಕರು, ಸಹ-ಸಂದರ್ಶಕರು ಮತ್ತು ಕುಲಾಧಿಪತಿಯವರು ಇವರುಗಳ ಗೈರು ಹಾಜರಿಯ ಸಂದರ್ಭದಲ್ಲಿ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**18. ಸಹಕುಲಪತಿಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಮೂರು ಜನರನ್ನು ಮೀರದಂತೆ ಸಹಕುಲಪತಿಗಳನ್ನು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**19. ವ್ಯಾಸಂಗ ವಿಭಾಗಗಳ ಡೀನ್‌ಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಪರಿನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವ್ಯಾಸಂಗ ವಿಭಾಗಗಳ ಡೀನ್‌ಗಳನ್ನು ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**20. ಕುಲಸಚಿವರು.–** (1) ಕುಲಾಧಿಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಸಚಿವರನ್ನು ನೇಮಕ ಮಾಡತಕ್ಕದ್ದು.

(2) ಪರಿನಿಯಮಗಳಲ್ಲಿ ಪರಿಭಾಷಿಸಿರುವಂಥ ಎಲ್ಲಾ ಕರಾರುಗಳನ್ನು ವಿಶ್ವವಿದ್ಯಾಲಯದ ಪರವಾಗಿ ಕುಲಸಚಿವರು ಮಾಡಿಕೊಳ್ಳತಕ್ಕದ್ದು ಮತ್ತು ಅದಕ್ಕೆ ಸಹಿ ಹಾಕತಕ್ಕದ್ದು.

(3) ಕುಲಸಚಿವರು ವಿಶ್ವವಿದ್ಯಾಲಯದ ಪರವಾಗಿ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಪರಿನಿಯಮಗಳಿಂದ ಪ್ರದತ್ತಗೊಳಿಸಬಹುದಾದಂಥ ಅಥವಾ ಕುಲಾಧಿಪತಿಯವರು ಮತ್ತು ಕುಲಪತಿಯವರು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು ವಿಶ್ವವಿದ್ಯಾಲಯದ ದಾಖಲೆಗಳು ಮತ್ತು ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು, ಕುಲಪತಿಯವರು ಅಥವಾ ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಅಂಥ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿತಕ್ಕದ್ದು.

**21. ಹಣಕಾಸು ಅಧಿಕಾರಿ.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು, ಪರಿನಿಯಮಗಳ ಮೂಲಕ ಪ್ರದತ್ತಗೊಳಿಸಬಹುದಾದ ಅಂಥ ವಿಧಾನದಲ್ಲಿ ಹಣಕಾಸು ಅಧಿಕಾರಿಯನ್ನು

ನೇಮಕ ಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**22. ಇತರ ಅಧಿಕಾರಿಗಳು.–** ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ ನೇಮಕಾತಿಯ ವಿಧಾನ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಕರ್ತವ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ – IV

### ವಿಶ್ವವಿದ್ಯಾಲಯದ ಪ್ರಾಧಿಕಾರಗಳು

**23 ವಿಶ್ವವಿದ್ಯಾಲಯದ ಪ್ರಾಧಿಕಾರಗಳು –** ಈ ಮುಂದಿನವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:–

(i) ಪ್ರಬಂಧಕ ಮಂಡಳಿ;

(ii) ಕಾರ್ಯಕಾರಿ ಪರಿಷತ್ತು;

(iii) ಶೈಕ್ಷಣಿಕ ಪರಿಷತ್ತು;

(iv) ಸಂಶೋಧನಾ ಪರಿಷತ್ತು;

(v) ಹಣಕಾಸು ಸಮಿತಿ; ಮತ್ತು

(vi) ವಿಶ್ವವಿದ್ಯಾಲಯದ ಪ್ರಾಧಿಕಾರಗಳೆಂದು ಪರಿನಿಯಮಗಳ ಮೂಲಕ ಘೋಷಿಸಬಹುದಾದ ಅಂಥ ಇತರ ಪ್ರಾಧಿಕಾರಗಳು.

**24. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು.–** (1) ಪ್ರಬಂಧಕ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು – ಅಧ್ಯಕ್ಷರು;

(ii) ಕುಲಪತಿಯವರು – ಸದಸ್ಯರು;

(iii) ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(iv) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(v) ರಾಜ್ಯ ಸರ್ಕಾರವು ನಾಮ ನಿರ್ದೇಶನ ಮಾಡಿದ ಆಡಳಿತವನ್ನು ಒಳಗೊಂಡಂತೆ ವ್ಯವಸ್ಥಾಪನೆ, ಹಣಕಾಸು ಅಥವಾ ಯಾವುದೇ ಇತರ ವಿಶೇಷ ಕ್ಷೇತ್ರದಲ್ಲಿನ ಒಬ್ಬರು ತಜ್ಞರು;

(vi) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಇಬ್ಬರು ವ್ಯಕ್ತಿಗಳು ಅವರ ಪೈಕಿ ಒಬ್ಬರು ಮಹಿಳೆಯಾಗಿರತಕ್ಕದ್ದು;

(vii) ಸಹ ಕುಲಪತಿಯವರು ಮತದಾನದ ಹಕ್ಕಿಲ್ಲದ ಸದಸ್ಯರಾಗಿರತಕ್ಕದ್ದು;

(viii) ವಿಶ್ವವಿದ್ಯಾಲಯ ಅನುದಾನ ಆಯೋಗದ ನಾಮನಿರ್ದೇಶಿತ ಒಬ್ಬ ಸುಪ್ರಸಿದ್ಧ ಶಿಕ್ಷಣ ತಜ್ಞರು.

(2) ಕುಲಸಚಿವರು ಪ್ರಬಂಧಕ ಮಂಡಳಿಯ ಮತ ದಾನದ ಹಕ್ಕಿರದ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ಪ್ರಬಂಧಕ ಮಂಡಳಿಯ ಸದಸ್ಯರ ಪದಾವಧಿ, ಸರ್ಕಾರದಿಂದ ನಾಮನಿರ್ದೇಶಿತರಾದ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ನೇಮಕಾತಿ, ನವೀಕರಣ ಮತ್ತು ತೆಗೆದುಹಾಕುವುದು ಮುಂತಾದವುಗಳು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಾಧಿಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರ ಗೈರುಹಾಜರಿಯಲ್ಲಿ ಕುಲಾಧಿಪತಿಯವರಿಂದ ನಾಮನಿರ್ದೇಶಿತರಾದ ಯಾರಾದರೂ ಒಬ್ಬರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು. ಅಂಥ ಸಭೆಯ ಅಧ್ಯಕ್ಷತೆಯನ್ನು ವಹಿಸುವುದಕ್ಕೆ ಕುಲಾಧಿಪತಿಯವರು ಯಾವೊಬ್ಬ ವ್ಯಕ್ತಿಯನ್ನೂ ನಾಮನಿರ್ದೇಶನ ಮಾಡಿರದಿದ್ದಲ್ಲಿ, ಸಭೆಯಲ್ಲಿ ಹಾಜರಿರುವ ಸದಸ್ಯರು ಸರಳ ಬಹುಮತದ ಮೂಲಕ ಅವರುಗಳ ಪೈಕಿಯಿಂದಲೇ ಆ ಸಭೆಗೆ ಮಾತ್ರವೇ ಅಧ್ಯಕ್ಷನನ್ನು ಚುನಾಯಿಸತಕ್ಕದ್ದು.

(5) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಿಗೆ, ಅಂಥ ಸಭೆಯಲ್ಲಿ ಹಾಜರಾಗುವ ಮತ್ತು ಮತದಾನ ನೀಡುವ ಮೂರು ಜನ ಸದಸ್ಯರು ಗಣಪೂರ್ತಿ (ಕೋರಂ) ಆಗಿರತಕ್ಕದ್ದು:

ಪರಂತು, ಪ್ರಬಂಧಕ ಮಂಡಳಿಯ ಯಾವುದೇ ಸಭೆಯ ಕೋರಂ ಪೂರ್ಣವಾಗಬೇಕಾದರೆ ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಿರುವುದು ಮತ್ತು ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ನಾಮನಿರ್ದೇಶಿತರು ಹಾಜರಾಗದೇ ಇದ್ದಾಗ ಕುಲಪತಿಯವರು ಹಾಜರಿರುವುದು ಯಾವಾಗಲೂ ಅವಶ್ಯವಾಗಿರತಕ್ಕದ್ದು.

(6) ಪ್ರಬಂಧಕ ಮಂಡಳಿಯು ವಿಶ್ವವಿದ್ಯಾಲಯದ ಪ್ರಧಾನ ಪ್ರಬಂಧಕ ಸಂಸ್ಥೆಯಾಗಿರತಕ್ಕದ್ದು ಮತ್ತು ಅದು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಕಗೊಳಿಸುವುದು;

(ii) ವಿಶ್ವವಿದ್ಯಾಲಯವು ಅನುಸರಿಸಬೇಕಾದ ಕಾರ್ಯನೀತಿಗಳನ್ನು ರಚಿಸುವುದು;

(iii) ಈ ಅಧಿನಿಯಮದ ಅಥವಾ ಪರಿನಿಯಮಗಳ ಅಥವಾ ನಿಯಮಗಳ ಉಪಬಂಧಗಳಿಗೆ ಅನುಗುಣವಾಗಿ ಇರದ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ತೀರ್ಮಾನಗಳನ್ನು ಪುನರೀಕ್ಷಿಸುವುದು;

(iv) ವಿಶ್ವವಿದ್ಯಾಲಯದ ಆಯವ್ಯಯ ಮತ್ತು ವಾರ್ಷಿಕ ವರದಿಗಳನ್ನು ಅನುಮೋದಿಸುವುದು;

(v) ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸುವುದು ಅಥವಾ ಈಗಾಗಲೇ ಇರುವ ಪರಿನಿಯಮಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವುದು ಅಥವಾ ನಿರಸನಗೊಳಿಸುವುದು;

(vi) ವಿಶ್ವವಿದ್ಯಾಲಯವನ್ನು ಸ್ವಯಂಸಮಾಪನಗೊಳಿಸುವ ನಿರ್ಧಾರವನ್ನು ತೆಗೆದುಕೊಳ್ಳುವುದು;

(vii) ಸರ್ಕಾರಕ್ಕೆ ಸಲ್ಲಿಸುವ ಪ್ರಸ್ತಾವಗಳನ್ನು ಅನುಮೋದಿಸುವುದು;

(viii) ಶುಲ್ಕ ನಿಯಂತ್ರಣ ಸಮಿತಿಗೆ ಮೂವರು ಸದಸ್ಯರನ್ನು ನಾಮನಿರ್ದೇಶನ ಮಾಡುವುದು;

(ix) ವಿಶ್ವವಿದ್ಯಾಲಯದ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕೆ ಅಪೇಕ್ಷಣೀಯವೆಂದು ಕಂಡುಬರುವಂಥ ತೀರ್ಮಾನಗಳನ್ನು ಮತ್ತು ಕ್ರಮಗಳನ್ನು ಕೈಗೊಳ್ಳುವುದು.

(7) ಪ್ರಬಂಧಕ ಮಂಡಳಿಯು ಒಂದು ವರ್ಷದಲ್ಲಿ ಕನಿಷ್ಠ ಮೂರು ಸಲ ಸಭೆ ಸೇರತಕ್ಕದ್ದು.

**25. ಕಾರ್ಯಕಾರಿ ಪರಿಷತ್ತು.**- (1) ಕಾರ್ಯಕಾರಿ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಗಳು;

(ii) ಸಹಕುಲಪತಿಗಳು;

(iii) ಕುಲಸಚಿವರು;

(iv) ಪ್ರಾಯೋಜಕ ಸಂಸ್ಥೆಯ ಇಬ್ಬರು ನಾಮನಿರ್ದೇಶಿತರು;

(v) ಕುಲಪತಿಗಳು ನಾಮನಿರ್ದೇಶಿಸಬಹುದಾದ ವಿದ್ಯಾಲಯಗಳ ಇಬ್ಬರು ಡೀನ್‌ಗಳು;

(2) ಕುಲಪತಿಯವರು ಕಾರ್ಯಕಾರಿ ಪರಿಷತ್ತಿನ ಅಧ್ಯಕ್ಷರಾಗಿರತಕ್ಕದ್ದು ಮತ್ತು ಕುಲಸಚಿವರು ಕಾರ್ಯಕಾರಿ ಪರಿಷತ್ತು ಕಾರ್ಯದರ್ಶಿಯಾಗಿರತಕ್ಕದ್ದು.

(3) ಕಾರ್ಯಕಾರಿ ಪರಿಷತ್ತಿನ ಅಧಿಕಾರಗಳು ಮತ್ತು ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ಕಾರ್ಯಕಾರಿ ಪರಿಷತ್ತಿನ ಎಲ್ಲಾ ಸಭೆಗಳಲ್ಲಿ ಯಾವಾಗಲೂ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು ಹಾಗೂ ಕುಲಪತಿಯವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೇ ಇದ್ದ ಸಂದರ್ಭದಲ್ಲಿ ಸಭೆಯಲ್ಲಿ ಹಾಜರಿರುವ ಸದಸ್ಯರು ಚುನಾಯಿಸಿದ ಯಾವುದೇ ಇತರ ಸದಸ್ಯರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ಕಾರ್ಯಕಾರಿ ಪರಿಷತ್ತಿನ ಸಭೆಯಲ್ಲಿ ಯಾವುದೇ ವಿಷಯವನ್ನು ಕುರಿತು ವಿವಾದ ಉಂಟಾದಲ್ಲಿ ಸದರಿ ವಿಷಯವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯದ ಬಗ್ಗೆ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**26. ಶೈಕ್ಷಣಿಕ ಪರಿಷತ್ತು.**–(1) ಶೈಕ್ಷಣಿಕ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಕಾರ್ಯದರ್ಶಿಗಳು

(iv) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಶೈಕ್ಷಣಿಕ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಶೈಕ್ಷಣಿಕ ಸಂಸ್ಥೆಯಾಗಿರತಕ್ಕದ್ದು ಮತ್ತು ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಹಾಗೂ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**27. ಸಂಶೋಧನಾ ಪರಿಷತ್ತು.**– (1) ಸಂಶೋಧನಾ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಸಂಶೋಧನಾ ಸಮಿತಿಯಾಗಿರತಕ್ಕದ್ದು ಹಾಗೂ ಸಂಶೋಧನಾ ಕ್ಷೇತ್ರಗಳ ಆದ್ಯತೆಯೂ ಒಳಗೊಂಡಂತೆ, ವಿಶ್ವವಿದ್ಯಾಲಯವು ಕೈಗೊಳ್ಳಬೇಕಾದ ಸಂಶೋಧನಾ ಬಗ್ಗೆ ಒಂದು ವ್ಯಾಪಕವಾದ ಪರಿಪೂರ್ಣ ಭವಿಷ್ಯದ್ ದೃಷ್ಟಿಯನ್ನು ಒದಗಿಸತಕ್ಕದ್ದು. ಈ ಪರಿಷತ್ತು, ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಮತ್ತು ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಸಂಶೋಧನೆ ಮತ್ತು ಅನ್ವೇಷಣಾ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ಸಂಶೋಧನಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಸಂಶೋಧನೆಯ ಡೀನ್ – ಕಾರ್ಯದರ್ಶಿ

(iv) ಅನ್ವೇಷಣಾ ವಿಭಾಗದ ಮುಖ್ಯಸ್ಥರು – ಸದಸ್ಯರು

(v) ಎಲ್ಲಾ ವ್ಯಾಸಂಗ ವಿಭಾಗಗಳ ಡೀನ್‌ಗಳು – ಸದಸ್ಯರು ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

**28. ಹಣಕಾಸು ಪರಿಷತ್ತು.**– (1) ಹಣಕಾಸು ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು ಅಥವಾ ಅವರ ನಾಮನಿರ್ದೇಶಿತರು – ಅಧ್ಯಕ್ಷರು

(ii) ಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಸದಸ್ಯರು

(iv) ಹಣಕಾಸು ಅಧಿಕಾರಿ – ಕಾರ್ಯದರ್ಶಿ

(v) ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು – ಸದಸ್ಯರು; ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಹಣಕಾಸು ಪರಿಷತ್ತು ಹಣಕಾಸಿನ ವಿಷಯಗಳನ್ನು ಕೈಗೊಳ್ಳುವ ವಿಶ್ವವಿದ್ಯಾಲಯದ ಪ್ರಧಾನ ಹಣಕಾಸು ಸಂಸ್ಥೆಯಾಗಿರತಕ್ಕದ್ದು ಹಾಗೂ ಅದು ಈ ಅಧಿನಿಯಮ, ನಿಯಮಗಳು ಮತ್ತು ಪರಿನಿಯಮಗಳ ಉಪಬಂಧಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಹಣಕಾಸು ವಿಷಯಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**29. ಇತರ ಪ್ರಾಧಿಕಾರಗಳು.–** ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ರಚನೆ, ಅಧಿಕಾರಗಳು ಹಾಗೂ ಪ್ರಕಾರ್ಯಗಳು ಪರಿನಿಯಮಗಳಿಂದ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

**30. ಒಂದು ಪ್ರಾಧಿಕಾರದ ಅಥವಾ ಸಂಸ್ಥೆಯ ಸದಸ್ಯತ್ವಕ್ಕೆ ಅನರ್ಹತೆ.–** ವಿಶ್ವವಿದ್ಯಾಲಯದ ಸಂಸ್ಥೆಗಳ ಯಾವುವೇ ಪ್ರಾಧಿಕಾರಗಳ ಒಬ್ಬ ವ್ಯಕ್ತಿಯು,–

(ಎ) ಅಸ್ವಸ್ಥ ಚಿತ್ತನಾಗಿದ್ದು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿಸಲ್ಪಟ್ಟಿದ್ದರೆ;

(ಬಿ) ಅವಿಮುಕ್ತ ದಿವಾಳಿಯಾಗಿದ್ದರೆ;

(ಸಿ) ನೈತಿಕ ಅಧಃಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದರೆ;

(ಡಿ) ಖಾಸಗಿ ಬೋಧನಾ ತರಗತಿಗಳನ್ನು ನಡೆಸುತ್ತಿದ್ದರೆ ಅಥವಾ ಸ್ವತಃ ನಿರತನಾಗಿದ್ದರೆ;

(ಇ) ಯಾವುದೇ ವಿಧದಲ್ಲಿ, ಎಲ್ಲಿಯೇ, ಯಾವುದೇ ಪರೀಕ್ಷೆಯನ್ನು ನಡೆಸುವಲ್ಲಿ ಅನುಚಿತ ಅಭ್ಯಾಸದಲ್ಲಿ ತೊಡಗಿದ್ದಕ್ಕಾಗಿ ಅಥವಾ ಉತ್ತೇಜಿಸಿದ್ದಕ್ಕಾಗಿ ದಂಡಿತನಾಗಿದ್ದರೆ;

(ಎಫ್) ಪ್ರಾಯೋಜಿತ ಸಂಸ್ಥೆಯು ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಯಾವೊಬ್ಬ ಸದಸ್ಯನನ್ನು ಆ ಪದವನ್ನು ಹೊಂದಿರುವುದಕ್ಕೆ ಅರ್ಹನಲ್ಲನೆಂದು ಲಿಖಿತದಲ್ಲಿ ಅಭಿಪ್ರಾಯ ನೀಡಿದಾಗಲೆಲ್ಲಾ,

–ಸದಸ್ಯನಾಗಿರುವುದಕ್ಕೆ ಅನರ್ಹನಾಗತಕ್ಕದ್ದು.

**31. ಖಾಲಿಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಕಾರ್ಯ ಅಥವಾ ವ್ಯವಹರಣೆಗಳು ಕೇವಲ ಅದರಲ್ಲಿ ಯಾವುದೇ ಖಾಲಿಸ್ಥಾನ ಇದೆ ಎಂಬ ಕಾರಣದಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣದಿಂದ ಮಾತ್ರವೇ ಅಸಿಂಧುವಾಗತಕ್ಕದ್ದಲ್ಲ.

**32. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು.–** (1) ಯಾವುವೇ ಕಾರ್ಯಸೂಚಿ ವಿಷಯಗಳನ್ನು ಕುಲಾಧಿಪತಿಯವರ ಪೂರ್ವಾನುಮೋದನೆಯನ್ನು ಪಡೆಯದೇ ಪ್ರಬಂಧಕ ಮಂಡಳಿಯ ಅಥವಾ ಕಾರ್ಯಕಾರಿ ಪರಿಷತ್ತು ಅಥವಾ ಯಾವುದೇ ಸಮಿತಿಯ ಸಭೆಗಳ ಕಾರ್ಯಸೂಚಿ ವಿಷಯಗಳಲ್ಲಿ ಸೇರಿಸತಕ್ಕದ್ದಲ್ಲ ಅಥವಾ ಚರ್ಚೆಗೆ ತೆಗೆದುಕೊಳ್ಳತಕ್ಕದ್ದಲ್ಲ ಮತ್ತು ತೀರ್ಮಾನಿಸತಕ್ಕದ್ದಲ್ಲ.

(2) ಈ ಅಧಿನಿಯಮದ ಯಾವುದೇ ಉಪಬಂಧಗಳನ್ನು ಪಾಲಿಸದೆ ಇರುವ ಸಂದರ್ಭದಲ್ಲಿ, ಕುಲಾಧಿಪತಿಯವರು ವಿಶ್ವವಿದ್ಯಾಲಯದ ಯಾವುದೇ ಪದಾಧಿಕಾರಿ ಅಥವಾ ಸಂಸ್ಥೆಯು ತೆಗೆದುಕೊಂಡ ಎಲ್ಲಾ ತೀರ್ಮಾನಗಳನ್ನು ವಿಪರ್ಯಯಗೊಳಿಸುವ ಮೂಲಕ ಪರಿಹಾರ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಅಧಿಕಾರವನ್ನು ಎಲ್ಲಾ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಅಂಥ ಪರಿಹಾರ ಕ್ರಮದ ಪರಿಣಾಮವಾಗಿ ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ವಿಶ್ವವಿದ್ಯಾಲಯದ ಪದಾಧಿಕಾರಿ ಅಥವಾ ಸಂಸ್ಥೆಯು ಕೈಗೊಂಡಿದ್ದ ಎಲ್ಲಾ ಅಂಥ ಕ್ರಮಗಳು, ಮೊದಲಿನಿಂದಲೂ ಶೂನ್ಯ ಮತ್ತು ಅಕೃತ ಎಂದು ಭಾವಿಸತಕ್ಕದ್ದು ಹಾಗೂ ತತ್ಪರಿಣಾಮವಾಗಿ, ಉಪಬಂಧ ಪಾಲಿಸದೇ ಇದ್ದ ವಿಷಯ ಅಥವಾ ನಿರ್ಧಾರದ ಸಂಬಂಧದಲ್ಲಿ ಅದಕ್ಕೆ ಮುಂಚೆ ಇದ್ದ ವಸ್ತುಸ್ಥಿತಿಯೇ ಮುಂದುವರಿಯತಕ್ಕದ್ದು.

## ಅಧ್ಯಾಯ V

## ಪರಿನಿಯಮಗಳು ಮತ್ತು ವಿನಿಯಮಗಳು

33. **ಪರಿನಿಯಮಗಳು.-** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಪರಿನಿಯಮಗಳು ವಿಶ್ವವಿದ್ಯಾಲಯಕ್ಕೆ ಮತ್ತು ಸಿಬ್ಬಂದಿಗೆ ಸಂಬಂಧಿಸಿದ ಎಲ್ಲಾ ಅಥವಾ ಯಾವುದೇ ವಿಷಯಕ್ಕೆ ಈ ಕೆಳಗಿನಂತೆ ಉಪಬಂಧ ಕಲ್ಪಿಸಬಹುದು, ಎಂದರೆ:-

(i) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಕಾರ್ಯಕಲಾಪಗಳನ್ನು ನಡೆಸುವ ಮತ್ತು ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸದಿರುವ ಸಂಸ್ಥೆಗಳ ರಚನೆಯ ಕಾರ್ಯವಿಧಾನ;

(ii) ಶಾಶ್ವತ ಶಾಸನಬದ್ಧ ದತ್ತಿ ನಿಧಿ, ವಿಶ್ವವಿದ್ಯಾಲಯ ದತ್ತಿ ನಿಧಿ, ಸಾಮಾನ್ಯ ನಿಧಿ ಹಾಗೂ ಅಭಿವೃದ್ಧಿ ನಿಧಿಗಳ ನಿರ್ವಹಣೆ;

(iii) ಕುಲಪತಿಗಳು, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರ ನೇಮಕಾತಿಯ ನಿಬಂಧನೆಗಳು ಹಾಗೂ ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಪ್ರಕಾರ್ಯಗಳು;

(iv) ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ, ಅಧ್ಯಾಪಕರ ಮತ್ತು ನೌಕರರ ನೇಮಕಾತಿ ವಿಧಾನ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(v) ವಿಶ್ವವಿದ್ಯಾಲಯ ಹಾಗೂ ಅದರ ಅಧಿಕಾರಿಗಳು, ವ್ಯಾಸಂಗ ವಿಭಾಗದ (ಫ್ಯಾಕಲ್ಟಿ) ಸದಸ್ಯರು, ನೌಕರರು ಹಾಗೂ ವಿದ್ಯಾರ್ಥಿಗಳ ನಡುವೆ ಉಂಟಾದ ವಿವಾದಗಳನ್ನು ಪರಿಹರಿಸುವ ಕಾರ್ಯವಿಧಾನ;

(vi) ವಿಭಾಗಗಳು ಮತ್ತು ವ್ಯಾಸಂಗ ವಿಭಾಗಗಳ (ಫ್ಯಾಕಲ್ಟಿಗಳ) ಸೃಜನೆ, ರದ್ದತಿ ಅಥವಾ ಪುನಾರಚನೆ;

(vii) ಇತರ ವಿಶ್ವವಿದ್ಯಾಲಯಗಳು ಅಥವಾ ಉನ್ನತ ಕಲಿಕಾ ಸಂಸ್ಥೆಗಳ ಜೊತೆಯಲ್ಲಿ ಸಹಕರಿಸಬೇಕಾದ ರೀತಿ;

(viii) ಗೌರವ ಪದವಿಗಳ ನೀಡಿಕೆಯ ಕಾರ್ಯವಿಧಾನ;

(ix) ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿವೇತನ ಮಂಜೂರಾತಿಗೆ ಸಂಬಂಧಿಸಿದ ಉಪಬಂಧಗಳು;

(x) ವಿವಿಧ ವ್ಯಾಸಂಗ ಕ್ರಮಗಳಲ್ಲಿನ ಸೀಟುಗಳ ಸಂಖ್ಯೆಗೆ ಸಂಬಂಧಿಸಿದ ಕಾರ್ಯನೀತಿಗಳು ಮತ್ತು ಅಂಥ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಕಾರ್ಯವಿಧಾನ;

(xi) ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಶುಲ್ಕಕ್ಕೆ ಸಂಬಂಧಿಸಿದ ಕಾರ್ಯನೀತಿ;

(xii) ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಉಚಿತ ಶಿಕ್ಷಣ, ಪದಕಗಳು ಹಾಗೂ ಬಹುಮಾನಗಳನ್ನು ಪ್ರಾರಂಭಿಸುವುದು;

(xiii) ಪ್ರಬಂಧಕ ಮಂಡಳಿಯು ನಿರ್ಧರಿಸಬಹುದಾದ ಅಥವಾ ಈ ಅಧಿನಿಯಮದ ಅಡಿಯಲ್ಲಿ ಪರಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬೇಕಾದ ಅಗತ್ಯತೆಯುಳ್ಳ ಯಾವುದೇ ಇತರ ವಿಷಯಗಳು.

34. **ಪರಿನಿಯಮಗಳ ರಚನೆ ವಿಧಾನ.-** (1) ವ್ಯವಸ್ಥಾಪನಾ ಮಂಡಳಿಯು ರಚಿಸಿದ ಮೊದಲ ಶಾಸನಗಳನ್ನು ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ವ್ಯವಸ್ಥಾಪನಾ ಮಂಡಳಿಯು ಸಲ್ಲಿಸಿದ ಮೊದಲ ಪರಿನಿಯಮಗಳನ್ನು ಪ್ರಬಂಧಕ ಮಂಡಳಿಯು ಪರಿಗಣಿಸತಕ್ಕದ್ದು ಹಾಗೂ ತಾನು ಅವಶ್ಯವೆಂದು ಭಾವಿಸಬಹುದಾದ ಅಂಥ ಮಾರ್ಪಾಡುಗಳು, ಯಾವುದಾದರು ಇದ್ದಲ್ಲಿ, ಅವುಗಳೊಡನೆ ತನ್ನ ಅನುಮೋದನೆಯನ್ನು ನೀಡತಕ್ಕದ್ದು.

(3) ವಿಶ್ವವಿದ್ಯಾಲಯವು, ಪ್ರಬಂಧಕ ಮಂಡಳಿಯು ಅನುಮೋದಿಸಿದ ಮೊದಲ ಪರಿನಿಯಮಗಳನ್ನು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ಪ್ರಕಟಿಸತಕ್ಕದ್ದು ಮತ್ತು ತದನಂತರ ಮೊದಲ ಪರಿನಿಯಮಗಳ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

35. **ಪರಿನಿಯಮಗಳ ತಿದ್ದುಪಡಿಯ ಅಧಿಕಾರ.-** ಪ್ರಬಂಧಕ ಮಂಡಳಿಯು ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸಬಹುದು ಅಥವಾ ಪರಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ಅವನ್ನು ನಿರಸನಗೊಳಿಸಬಹುದು.

**36. ವಿನಿಯಮಗಳು.-** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ವಿನಿಯಮಗಳು ಈ ಮುಂದಿನ ವಿಷಯಗಳಿಗೆ ಉಪಬಂಧಗಳನ್ನು ಕಲ್ಪಿಸಬಹುದು, ಎಂದರೆ:-

(i) ವಿಶ್ವವಿದ್ಯಾಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ವಿದ್ಯಾರ್ಥಿ ಪಟ್ಟಿಯಲ್ಲಿ ಅವರುಗಳ ದಾಖಲಾತಿ ಹಾಗೂ ಮುಂದುವರಿಕೆ;

(ii) ವಿಶ್ವವಿದ್ಯಾಲಯದ ಎಲ್ಲಾ ಪದವಿಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ನಿಗದಿಪಡಿಸತಕ್ಕ ವ್ಯಾಸಂಗ ಕ್ರಮಗಳು;

(iii) ಪದವಿಗಳ ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರದಾನ;

(iv) ಸಂಶೋಧನಾ ವೇತನಗಳು (ಫೆಲೋಶಿಪ್), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಪದಕಗಳು ಮತ್ತು ಬಹುಮಾನಗಳನ್ನು ನೀಡಲು ಷರತ್ತುಗಳು;

(v) ಪರೀಕ್ಷೆಗಳನ್ನು ನಡೆಸುವುದು ಹಾಗೂ ಪರೀಕ್ಷೆ ನಡೆಸುವ ಸಂಸ್ಥೆಗಳು, ಪರೀಕ್ಷಕರು, ಪರೀಕ್ಷಾ ಮೇಲ್ವಿಚಾರಕರು, ಟ್ಯಾಬುಲೇಟರ್‌ಗಳು ಮತ್ತು ಮಾಡರೇಟರ್‌ಗಳ ನೇಮಕಾತಿ ಷರತ್ತುಗಳು ಮತ್ತು ವಿಧಾನ ಹಾಗೂ ಅವರ ಕರ್ತವ್ಯಗಳು;

(vi) ವಿಶ್ವವಿದ್ಯಾಲಯದ ಪರೀಕ್ಷೆಗಳಿಗೆ, ಪದವಿಗಳಿಗೆ ಹಾಗೂ ಇತರ ಶೈಕ್ಷಣಿಕ ಪ್ರಶಸ್ತಿಗಳಿಗೆ ಪ್ರವೇಶಕ್ಕೆ ವಿಧಿಸತಕ್ಕ ಶುಲ್ಕ;

(vii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನಲ್ಲಿ ವಿದ್ಯಾರ್ಥಿಗಳ ನಿವಾಸಕ್ಕಾಗಿ ಷರತ್ತುಗಳು;

(viii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಶಿಸ್ತು ಪಾಲನೆ;

(ix) ಈ ಅಧಿನಿಯಮದ ಅಡಿಯಲ್ಲಿನ ಪರಿನಿಯಮಗಳಲ್ಲಿ ಉಪಬಂಧ ಕಲ್ಪಿಸಬಹುದಾಂಥ ಇತರ ಎಲ್ಲಾ ವಿಷಯಗಳು.

**37. ವಿನಿಯಮಗಳ ರಚನೆ ವಿಧಾನ.-** ವಿನಿಯಮಗಳನ್ನು ಶೈಕ್ಷಣಿಕ ಪರಿಷತ್ತು ರಚಿಸತಕ್ಕದ್ದು ಹಾಗೂ ವ್ಯವಸ್ಥಾಪನಾ ಮಂಡಳಿಯು ಅನುಮೋದಿಸತಕ್ಕದ್ದು.

**38. ವಿನಿಯಮಗಳ ತಿದ್ದುಪಡಿಗೆ ಅಧಿಕಾರ.-** ವ್ಯವಸ್ಥಾಪನಾ ಮಂಡಳಿಯ ಅನುಮೋದನೆಯೊಡನೆ ಶೈಕ್ಷಣಿಕ ಪರಿಷತ್ತು ಹೊಸ ವಿನಿಯಮಗಳನ್ನು ಅಥವಾ ಹೆಚ್ಚುವರಿ ವಿನಿಯಮಗಳನ್ನು ರಚಿಸಬಹುದು ಅಥವಾ ವಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ನಿರಸನಗೊಳಿಸಬಹುದು.

**39. ಶುಲ್ಕ ನಿಯಂತ್ರಣ ಸಮಿತಿ.-** (1) ಸರ್ಕಾರವು ರಚಿಸಿದ ನಿವೃತ್ತ ಸರ್ವೋಚ್ಚ ನ್ಯಾಯಾಲಯದ ಅಥವಾ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು ಮುಖ್ಯಸ್ಥರಾಗಿರುವ ಮತ್ತು ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ, ಉನ್ನತ ಶಿಕ್ಷಣ ಪ್ರಭಾರದಲ್ಲಿರುವ ಸರ್ಕಾರದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು, ವೈದ್ಯಕೀಯ ಶಿಕ್ಷಣದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು, ಒಬ್ಬ ಮಹಿಳೆಯೂ ಸೇರಿದಂತೆ ಪ್ರಬಂಧಕ ಮಂಡಳಿಯು ನಾಮನಿರ್ದೇಶಿಸಿದ ಇಬ್ಬರು ಶಿಕ್ಷಣ ತಜ್ಞರು ಇವರುಗಳನ್ನು ಒಳಗೊಂಡ ಒಂದು ಶುಲ್ಕ ನಿಯಂತ್ರಣ ಸಮಿತಿಯು, 9ನೇ ಪ್ರಕರಣದ ಅಡಿಯಲ್ಲಿ ಕರ್ನಾಟಕದ ವಿದ್ಯಾರ್ಥಿಗಳಿಗಾಗಿ ಮೀಸಲಿರಿಸಿದ ವಿಶ್ವವಿದ್ಯಾಲಯದ ಸ್ಥಾನಗಳ ಶುಲ್ಕವನ್ನು ನಿಯಂತ್ರಿಸತಕ್ಕದ್ದು. ಸಮಿತಿಯಲ್ಲಿ ಈ ಉದ್ದೇಶಕ್ಕಾಗಿ ಒಬ್ಬರು ಖ್ಯಾತ ಚಾರ್ಟರ್ಡ್ ಅಕೌಂಟೆಂಟ್ ರವರನ್ನು ಸಹ ಸದಸ್ಯನನ್ನಾಗಿ ಸೇರಿಸಿಕೊಳ್ಳತಕ್ಕದ್ದು.

(2) ಸಮಿತಿಯು ವಿಶ್ವವಿದ್ಯಾಲಯದ ಪ್ರವೇಶಗಳ ಮತ್ತು ಶುಲ್ಕದ ಸಂಗ್ರಹಣೆಯ ಅನುಪಾಲನೆಯನ್ನು ನೋಡಿಕೊಳ್ಳತಕ್ಕದ್ದು.

## ಅಧ್ಯಾಯ - VI

## ಸಂಕೀರ್ಣ

**40. ನೌಕರರ ಸೇವಾ ಷರತ್ತುಗಳು.-** (1) ಪರಿನಿಯಮಗಳ ಮತ್ತು ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಥವಾ ನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳು, ಯಾವುದಾದರೂ ಇದ್ದಲ್ಲಿ, ಅವುಗಳಿಗೆ ಒಳಪಟ್ಟು ಪ್ರತಿಯೊಬ್ಬ ನೌಕರನು ಲಿಖಿತ ಕರಾರಿನ ಅಡಿಯಲ್ಲಿ ನೇಮಕಗೊಳ್ಳತಕ್ಕದ್ದು ಮತ್ತು ಅದನ್ನು ವಿಶ್ವವಿದ್ಯಾಲಯದಲ್ಲಿ ಇಟ್ಟುಕೊಳ್ಳತಕ್ಕದ್ದು ಹಾಗೂ ಅದರ ಪ್ರತಿಯನ್ನು ಸಂಬಂಧಪಟ್ಟ ನೌಕರನಿಗೆ ನೀಡತಕ್ಕದ್ದು.

(2) ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಕಾರ್ಯವಿಧಾನಗಳ ಮೂಲಕ ನಿಯಂತ್ರಿಸತಕ್ಕದ್ದು.

(3) ಕರಾರಿನಿಂದಾಗಿ ವಿಶ್ವವಿದ್ಯಾಲಯ ಮತ್ತು ನೌಕರನ ಮಧ್ಯದಲ್ಲಿ ಉದ್ಭವಿಸಬಹುದಾದ ಯಾವುದೇ ವಿವಾದವನ್ನು ಲಿಖಿತ ಕರಾರಿನಲ್ಲಿ ಉಪಬಂಧಿಸಿದ ವಿಧಾನದಲ್ಲಿ ಹಾಗೂ ಪರಿನಿಯಮಗಳ ಅನುಸಾರವಾಗಿ ಪರಿಹರಿಸತಕ್ಕದ್ದು.

**41. ಮೇಲ್ಮನವಿ ಹಕ್ಕು.–** ವಿಶ್ವವಿದ್ಯಾಲಯವು ತನ್ನ ನೌಕರರ ಅಥವಾ ವಿದ್ಯಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡ ಸಂದರ್ಭದಲ್ಲಿ, ಬಾಧಿತ ನೌಕರ ಅಥವಾ ವಿದ್ಯಾರ್ಥಿಗಳು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಮೇಲ್ಮನವಿ ಹಕ್ಕನ್ನು ಹೊಂದಿರತಕ್ಕದ್ದು.

**42. ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿ .–** ವಿಶ್ವವಿದ್ಯಾಲಯವು, ತನ್ನ ನೌಕರರ ಪ್ರಯೋಜನಕ್ಕಾಗಿ, ಪರಿನಿಯಮಗಳು ಮತ್ತು ಜಾರಿಯಲ್ಲಿರುವ ಕಾನೂನುಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿಯನ್ನು ರಚಿಸತಕ್ಕದ್ದು ಹಾಗೂ ಅಂಥ ವಿಮಾ ಯೋಜನೆಗಳನ್ನು ಒದಗಿಸತಕ್ಕದ್ದು.

**43. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಇತರ ಸಂಸ್ಥೆಯ ಸದಸ್ಯನಾಗಿ ಯಾವೊಬ್ಬ ವ್ಯಕ್ತಿಯು ಸೂಕ್ತವಾಗಿ ಆಯ್ಕೆಯಾಗಿದ್ದಾನೆಯೇ ಅಥವಾ ನೇಮಕಗೊಂಡಿದ್ದಾನೆಯೇ ಅಥವಾ ಅದಕ್ಕೆ ಅರ್ಹನಾಗಿದ್ದಾನೆಯೇ ಎಂಬ ಯಾವುದೇ ಪ್ರಶ್ನೆ ಉದ್ಭವಿಸಿದರೆ, ಆ ವಿಷಯವನ್ನು ತೀರ್ಮಾನಕ್ಕಾಗಿ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**44. ಸಮಿತಿಗಳ ರಚನೆ.–** 23ನೇ ಪ್ರಕರಣದಲ್ಲಿ ನಮೂದಿಸಿದ ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಅಧಿಕಾರವನ್ನು ಹೊಂದಿರುವ ಅಂಥ ಸದಸ್ಯರನ್ನು ಒಳಗೊಂಡ ಅಂಥ ಪ್ರಾಧಿಕಾರದ ಒಂದು ಸಮಿತಿಯನ್ನು ರಚಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**45. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಂಸ್ಥೆಯ ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ಪೈಕಿ ಯಾವುದೇ ಸ್ಥಾನವು ಆಕಸ್ಮಿಕವಾಗಿ ಖಾಲಿಯಾದರೆ, ಯಾರ ಸ್ಥಾನವು ಖಾಲಿಯಾಗಿ ತುಂಬಬೇಕಾಗಿ ಬಂದಿದೆಯೋ ಆ ಸದಸ್ಯನನ್ನು ಯಾವ ರೀತಿಯಲ್ಲಿ ಆರಿಸಲಾಗಿತ್ತೋ ಅದೇ ರೀತಿಯಲ್ಲಿ ಹೊಸ ಸದಸ್ಯನನ್ನು ಆರಿಸಿ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ಖಾಲಿ ಸ್ಥಾನವನ್ನು ಭರ್ತಿ ಮಾಡಿದ ವ್ಯಕ್ತಿಯು ಆತನು ಯಾವ ಸದಸ್ಯನ ಸ್ಥಾನದಲ್ಲಿ ಭರ್ತಿಯಾಗಿರುವನೋ ಆ ಸದಸ್ಯನು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯನಾಗಿ ಉಳಿಯುತ್ತಿದ್ದ ಬಾಕಿ ಅವಧಿಯವರೆಗೆ ಮಾತ್ರ ಸದಸ್ಯನಾಗಿರತಕ್ಕದ್ದು.

**46. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.–** ಈ ಅಧಿನಿಯಮ ಅಥವಾ ಪರಿನಿಯಮಗಳು ಅಥವಾ ನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ವಿಶ್ವವಿದ್ಯಾಲಯದ ಯಾವೊಬ್ಬ ಅಧಿಕಾರಿ ಅಥವಾ ಇತರ ನೌಕರರ ವಿರುದ್ಧ ಯಾವುದೇ ದಾವೆ ಅಥವಾ ಇತರ ಕಾನೂನು ವ್ಯವಹರಣೆಗಳನ್ನು ನಡೆಸಲು ಅವಕಾಶ ಇರತಕ್ಕದ್ದಲ್ಲ.

**47. ತಾತ್ಕಾಲಿಕ ಉಪಬಂಧಗಳು.–** ಈ ಅಧಿನಿಯಮ ಮತ್ತು ಪರಿನಿಯಮಗಳ ಯಾವುದೇ ಇತರ ಉಪಬಂಧಗಳಲ್ಲಿ ಏನೇ ಇದ್ದರೂ.–

(i) ಮೊದಲ ಕುಲಪತಿ ಮತ್ತು ಸಹಕುಲಪತಿ, ಯಾರಾದರೂ ಇದ್ದರೆ, ಅವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(ii) ಮೊದಲ ಕುಲಸಚಿವರನ್ನು ಮತ್ತು ಮೊದಲ ಹಣಕಾಸು ಅಧಿಕಾರಿಯವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು; ಮತ್ತು

(iii) ಮೊದಲ ವ್ಯವಸ್ಥಾಪನ ಮಂಡಳಿ, ಮೊದಲ ಹಣಕಾಸು ಸಮಿತಿ, ಮೊದಲ ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಹಾಗೂ ಮೊದಲ ಶೈಕ್ಷಣಿಕ ಪರಿಷತ್ತನ್ನು ಕುಲಾಧಿಪತಿಯವರು ರಚಿಸತಕ್ಕದ್ದು.

**48. ಶಾಶ್ವತ ಶಾಸನಬದ್ಧ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಕನಿಷ್ಠ ಇಪ್ಪತ್ತೈದು ಕೋಟಿ ರೂಪಾಯಿಗಳನ್ನುಳ್ಳ ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು ಇದರ ಪೈಕಿ ಕನಿಷ್ಠ ಹದಿನೈದು ಕೋಟಿ ರೂಪಾಯಿಗಳು ನಗದು ರೂಪದಲ್ಲಿ ಮತ್ತು ಇನ್ನುಳಿದದ್ದು ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ಇರತಕ್ಕದ್ದು ಮತ್ತು ಇದನ್ನು ತಾನಾಗಿಯೆ ಹೆಚ್ಚಿಸಬಹುದಾಗಿದ್ದು ಆದರೆ ಕಡಿಮೆ ಮಾಡತಕ್ಕದ್ದಲ್ಲ.

ಪರಂತು, ಬೆಂಗಳೂರು ಅಥವಾ ಬೆಂಗಳೂರು ಗ್ರಾಮಾಂತರ ಜಲ್ಲೆಯ ಹೊರಗಿರುವ ವಿಶ್ವವಿದ್ಯಾಲಯದ ಸಂದರ್ಭದಲ್ಲಿ ಕನಿಷ್ಠ ಹತ್ತು ಕೋಟಿ ರೂಪಾಯಿಗಳು ನಗದು ರೂಪದಲ್ಲಿರತಕ್ಕದ್ದು ಮತ್ತು ಉಳಿದ ಐದು ಕೋಟಿ ರೂಪಾಯಿಗಳು ಬ್ಯಾಂಕ್ ಗ್ಯಾರಂಟಿಯ ರೂಪದಲ್ಲಿರತಕ್ಕದ್ದು.

(2) ವಿಶ್ವವಿದ್ಯಾಲಯವು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಹಣವನ್ನು ಹೂಡಲು ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯವು ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಗೆ ವರ್ಗಾವಣೆ ಮಾಡಬಹುದು. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನೂ ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(4) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಿದ ವರಮಾನದ ಶೇಕಡಾ ಎಪ್ಪತ್ತೈದರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತೈದರಷ್ಟನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಯಲ್ಲಿ ಪುನ: ತೊಡಗಿಸತಕ್ಕದ್ದು.

**49. ವಿಶ್ವವಿದ್ಯಾಲಯದ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ನಿಧಿಗಳನ್ನು ಒಳಗೊಂಡ ವಿಶ್ವವಿದ್ಯಾಲಯದ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದು ಕಾಲಕಾಲಕ್ಕೆ ಸ್ವೀಕರಿಸಬಹುದಾದ ದೇಣಿಗೆಗಳು ಮತ್ತು ಇತರ ನಿಧಿಗಳನ್ನು ಒಳಗೊಂಡಿರತಕ್ಕದ್ದು.

(2) ವಿಶ್ವವಿದ್ಯಾಲಯವು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ವಿಶ್ವವಿದ್ಯಾಲಯದ ದತ್ತಿನಿಧಿಯನ್ನು ಹೂಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯ ದತ್ತಿ ನಿಧಿಯು, ವಿಶ್ವವಿದ್ಯಾಲಯವು ತನ್ನ ಸಾಮಾಜಿಕ ಧ್ಯೇಯೋದ್ದೇಶಗಳನ್ನು ನೆರವೇರಿಸುವ ಸಂದರ್ಭದಲ್ಲಿ ಮತ್ತು/ಅಥವಾ ಮುಂಗಾಣದ ಸನ್ನಿವೇಶದಲ್ಲಿ ಉದ್ಭವಿಸಬಹುದಾದ ಹಣಕಾಸು ಸವಾಲುಗಳಿಂದ ತನ್ನನ್ನು ರಕ್ಷಿಸಿಕೊಳ್ಳುವುದಕ್ಕಾಗಿ, ಸ್ವಇಚ್ಛೆಯಿಂದ ನಿರ್ವಹಿಸಿಕೊಂಡು ಬರಲು ಮತ್ತು ಜವಾಬ್ದಾರಿಯಿಂದ ಹಣ ಹೂಡಿಕೆ ಮಾಡಲು ಇಚ್ಛೆಯುಳ್ಳವರಾಗಿ ಸ್ವಯಂ ವಿಧಿಸಿಕೊಂಡ ನಿಧಿಯಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಗೆ ವರ್ಗಾಯಿಸಬಹುದು. ವಿಶ್ವವಿದ್ಯಾಲಯದ ಸಮಾಪಣೆಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನು ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(5) ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಬರುವ ವರಮಾನದ ಶೇಕಡಾ ಎಂಭತ್ತರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸದ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತರಷ್ಟನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**50. ಸಾಮಾನ್ಯ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಸಾಮಾನ್ಯ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯವು ವಿಧಿಸಬಹುದಾದ ಎಲ್ಲಾ ಶುಲ್ಕಗಳು;

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವುದೇ ಇತರ ಮೂಲದಿಂದ ಸ್ವೀಕರಿಸಲಾದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ದೇಣಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು;

(2) ಸಾಮಾನ್ಯ ನಿಧಿಗೆ ಜಮಾ ಮಾಡುವ ನಿಧಿಗಳನ್ನು ವಿಶ್ವವಿದ್ಯಾಲಯದ ಎಲ್ಲಾ ಆವರ್ತಕ ವೆಚ್ಚಗಳನ್ನು ಭರಿಸಲು ಉಪಯೋಗಿಸಿಕೊಳ್ಳತಕ್ಕದ್ದು.

**51. ಅಭಿವೃದ್ಧಿ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಅಭಿವೃದ್ಧಿ ನಿಧಿಯನ್ನು ಸಹ ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ವಿದ್ಯಾರ್ಥಿಗಳಿಂದ ವಿಧಿಸಬಹುದಾದ ಅಭಿವೃದ್ಧಿ ಶುಲ್ಕಗಳು;

(ii) ವಿಶ್ವವಿದ್ಯಾಲಯದ ಅಭಿವೃದ್ಧಿಯ ಉದ್ದೇಶಗಳಿಗಾಗಿ ಯಾವುದೇ ಇತರ ಮೂಲಗಳಿಂದ ಸ್ವೀಕರಿಸಿದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ವಂತಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು; ಮತ್ತು

(v) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಲಾದ ಎಲ್ಲಾ ವರಮಾನಗಳು.

(2) ಅಭಿವೃದ್ಧಿ ನಿಧಿಗೆ ಕಾಲಕಾಲಕ್ಕೆ ಜಮಾ ಮಾಡಿದ ನಿಧಿಯನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಉಪಯೋಗಿಸಕೊಳ್ಳತಕ್ಕದ್ದು.

**52. ನಿಧಿಗಳ ನಿರ್ವಹಣೆ.–** 48, 49, 50 ಮತ್ತು 51ನೇ ಪ್ರಕರಣಗಳಡಿಯಲ್ಲಿ ಸ್ಥಾಪಿಸಲಾದ ನಿಧಿಗಳನ್ನು ಪ್ರಬಂಧಕ ಮಂಡಳಿಯ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ನಿಯಂತ್ರಿಸತಕ್ಕದ್ದು ಹಾಗೂ ನಿರ್ವಹಿಸತಕ್ಕದ್ದು.

**53. ವಾರ್ಷಿಕ ವರದಿ.–** (1) ವಿಶ್ವವಿದ್ಯಾಲಯದ ವಾರ್ಷಿಕ ವರದಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ಅದರ ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಪ್ರಬಂಧಕ ಮಂಡಳಿಯು ವಾರ್ಷಿಕ ವರದಿಯನ್ನು ತನ್ನ ಸಭೆಯಲ್ಲಿ ಪರಿಗಣಿಸತಕ್ಕದ್ದು ಹಾಗೂ ಅದನ್ನು ಮಾರ್ಪಾಡುಗಳೊಡನೆ ಅಥವಾ ಮಾರ್ಪಾಡುಗಳಿಲ್ಲದೆ ಅನುಮೋದಿಸಬಹುದು.

(3) ಪ್ರಬಂಧಕ ಮಂಡಳಿಯು ಸೂಕ್ತವಾಗಿ ಅನುಮೋದಿಸಿದ ವಾರ್ಷಿಕ ವರದಿಯ ಒಂದು ಪ್ರತಿಯನ್ನು ಪ್ರತಿವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ಡಿಸೆಂಬರ್ 31ಕ್ಕೆ ಮೊದಲು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**54. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.–** (1) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕ ಪತ್ರ ಮತ್ತು ಜಮಾ ಖರ್ಚು ಪಟ್ಟಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯಕ್ಕೆ ಎಲ್ಲಾ ಮೂಲಗಳಿಂದ ಪ್ರಾಪ್ತವಾಗುವ ಅಥವಾ ಸ್ವೀಕರಿಸಲಾಗುವ ಎಲ್ಲಾ ನಿಧಿಗಳು ಹಾಗೂ ವಿತರಿಸಿದ ಅಥವಾ ಸಂದಾಯ ಮಾಡಿದ ಎಲ್ಲಾ ಮೊಬಲಗುಗಳನ್ನು ವಿಶ್ವವಿದ್ಯಾಲಯವು ನಿರ್ವಹಿಸುವ ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕಪತ್ರಗಳನ್ನು ಪ್ರತಿ ವರ್ಷವೂ ಭಾರತದ ಚಾರ್ಟೆಡ್ ಅಕೌಂಟೆಂಟ್‌ಗಳ ಸಂಸ್ಥೆಯ ಸದಸ್ಯರಾಗಿರುವ ಒಬ್ಬ ಲೆಕ್ಕಪರಿಶೋಧಕರಿಂದ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಲೆಕ್ಕಪರಿಶೋಧನಾ ವರದಿಯೊಡನೆ, ಪ್ರತಿ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ನವೆಂಬರ್ 30ಕ್ಕೆ ಮೊದಲು ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(4) ವಾರ್ಷಿಕ ಲೆಕ್ಕಪತ್ರಗಳು, ಜಮಾಖರ್ಚು ಪಟ್ಟಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಪ್ರಬಂಧಕ ಮಂಡಳಿಯು ತನ್ನ ಸಭೆಯಲ್ಲಿ ಪರ್ಯಾಲೋಚಿಸತಕ್ಕದ್ದು ಮತ್ತು ಪ್ರಬಂಧಕ ಮಂಡಳಿಯು ಅದನ್ನು ತನ್ನ ಅಭಿಪ್ರಾಯಗಳೊಡನೆ ಸಂದರ್ಶಕರಿಗೆ ಹಾಗೂ ಸರ್ಕಾರಕ್ಕೆ ಪ್ರತಿ ವರ್ಷದ ಡಿಸೆಂಬರ್ 31ಕ್ಕೆ ಮೊದಲು ಕಳುಹಿಸತಕ್ಕದ್ದು.

**55. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಮಿತಿಯ ಯಾವುದೇ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ ಅಥವಾ ಗೊತ್ತುವಳಿಯು ಅಥವಾ ವಿಶ್ವವಿದ್ಯಾಲಯದ ಸ್ವಾಧೀನದಲ್ಲಿರುವ ಇತರ ದಾಖಲೆಗಳು ಅಥವಾ ವಿಶ್ವವಿದ್ಯಾಲಯವು ಯುಕ್ತವಾಗಿ ನಿರ್ವಹಿಸುವ ಯಾವುದೇ ರಿಜಿಸ್ಟರ್‌ನಲ್ಲಿಯ ಯಾವುದೇ ನಮೂದುಗಳ ಪ್ರತಿಯನ್ನು, ಅದರ ಮೇಲೆ ಕುಲಸಚಿವರು ಪ್ರಮಾಣೀಕರಿಸಿದ್ದರೆ, ಅದನ್ನು ಅಂಥ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ, ಗೊತ್ತುವಳಿ ಅಥವಾ ದಾಖಲೆ ಅಥವಾ ರಿಜಿಸ್ಟರ್‌ನಲ್ಲಿ ಇರುವ ನಮೂದನ್ನು ಮೇಲ್ನೋಟದ ಸಾಕ್ಷ್ಯವೆಂಬುದಾಗಿ ಸ್ವೀಕರಿಸತಕ್ಕದ್ದು ಮತ್ತು ವಿಷಯಗಳ ಸಾಕ್ಷಿಯಾಗಿ ಅಂಗೀಕರಿಸತಕ್ಕದ್ದು ಹಾಗೂ ಮೂಲ ದಾಖಲೆಗಳನ್ನೇ ಸಲ್ಲಿಸಿದ್ದರೆ ಅದನ್ನು, ದಾಖಲಿಸಿರುವ ವಿಷಯಗಳು ಮತ್ತು ವಹಿವಾಟುಗಳ ಸಾಕ್ಷ್ಯವಾಗಿ ಅಂಗೀಕರಿಸಲಾಗುತ್ತಿತ್ತೋ, ಅದೇ ರೀತಿಯಲ್ಲಿ ಇವನ್ನೂ ಸಾಕ್ಷ್ಯವಾಗಿ ಅಂಗೀಕರಿಸತಕ್ಕದ್ದು.

**56. ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ.–** ರಾಜ್ಯಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಥವಾ ಅದರಲ್ಲಿ ಇರುವ ಯಾವುವೇ ಉಪಬಂಧಗಳನ್ನು ಅಥವಾ ಅದರಡಿಯಲ್ಲಿ ರಚಿಸಿದ ಯಾವುವೇ ನಿಯಮಗಳು ಅಥವಾ ಆದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿರ್ದೇಶನ ನೀಡುವುದು ಅವಶ್ಯವೆಂದು ಅಥವಾ ಉಚಿತವೆಂದು ಅಭಿಪ್ರಾಯಪಟ್ಟಲ್ಲಿ ಅದು ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು

ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ ಅಥವಾ ಸಂದರ್ಭಾನುಸಾರವಾಗಿ ವ್ಯವಸ್ಥಾಪನಾ ಮಂಡಳಿಯು ಅಂಥ ಪ್ರತಿಯೊಂದು ನಿರ್ದೇಶನವನ್ನು ಪಾಲಿಸತಕ್ಕದ್ದು.

**57. ದಂಡಗಳು.-** (1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿತವಾದ ನಿಯಮಗಳು ಉಪಬಂಧಗಳನ್ನು ಅಥವಾ ಯಾವುದೇ ಪರೀಕ್ಷಾ ವಿಷಯಗಳನ್ನು ಅಥವಾ ಪದವಿಗಳನ್ನು ನೀಡುವುದಕ್ಕೆ ಅಥವಾ ಅಂಕಪಟ್ಟಿಗಳನ್ನು ನೀಡುವುದಕ್ಕೆ ಸಂಬಂಧಪಟ್ಟ ವಿಷಯಗಳಲ್ಲಿ ಉಲ್ಲಂಘನೆಗಳನ್ನು ಮಾಡುವ ಯಾವೊಬ್ಬ ವ್ಯಕ್ತಿಯು, ಅಪರಾಧ ನಿರ್ಣಯವಾದ ಮೇಲೆ, ಐವತ್ತು ಸಾವಿರ ರೂಪಾಯಿಗಳಿಗೆ ಕಡಿಮೆಯಲ್ಲದ ಆದರೆ ಹತ್ತು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಆರು ತಿಂಗಳ ಅವಧಿಗಿಂತ ಕಡಿಮೆಯಲ್ಲದ ಆದರೆ ಎರಡು ವರ್ಷಗಳ ಅವಧಿಯವರೆಗೆ ವಿಸ್ತರಿಸಬಹುದಾದ ಕಾರಾವಾಸದಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು:

ಪರಂತು, ವಿಶ್ವವಿದ್ಯಾಲಯವೂ ಸಹ ಒಳಗೊಂಡಿರುವಲ್ಲಿ, ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಈ ಅಧಿನಿಯಮದ ಅಡಿಯಲ್ಲಿ ನೀಡಲಾದ ಅನುಮತಿ ಪತ್ರವನ್ನು ಹಿಂತೆಗೆದುಕೊಳ್ಳತಕ್ಕದ್ದು.

(2) ಈ ಪ್ರಕರಣದ ಅಡಿಯಲ್ಲಿನ ದಂಡವನ್ನು ಇತರ ಯಾವುದೇ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಲಾದ ದಂಡಕ್ಕೆ ಬಾಧಕವಾಗದಂತೆ ವಿಧಿಸಬಹುದು.

**58. ಪ್ರವೇಶಿಸುವ ಮತ್ತು ಪರಿಶೋಧಿಸುವ ಅಧಿಕಾರ.-** ಈ ಉದ್ದೇಶಕ್ಕಾಗಿ, ರಾಜ್ಯಸರ್ಕಾರದಿಂದ ಪ್ರಾಧಿಕೃತಗೊಂಡ 'ಎ' ಸಮೂಹದ ಅಧಿಕಾರಿ ದರ್ಜೆಗಿಂತ ಕಡಿಮೆಇಲ್ಲದ ದರ್ಜೆಯ ಯಾವೊಬ್ಬ ಅಧಿಕಾರಿಯು, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಶನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ 37) ಅಡಿಯಲ್ಲಿ ನಿರ್ದಿಷ್ಟಪಡಿಸಿರಬಹುದಾದ ಅಂಥ ಷರತ್ತುಗಳಿಗೆ ಒಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ, ಆ ಅಧಿನಿಯಮದ 9ನೇ ಪ್ರಕರಣದ ಅಡಿಯಲ್ಲಿ ಉಪಬಂಧಿಸಲಾದಂತಹವೇ ಅಧಿಕಾರಗಳನ್ನು ಚಲಾಯಿಸಲು ಮತ್ತು ಪ್ರಕಾರ್ಯಗಳನ್ನು ನೆರವೇರಿಸಲು ಅಧಿಕೃತನಾದ ಅಧಿಕಾರಿ ಎಂಬುದಾಗಿ ಭಾವಿಸತಕ್ಕದ್ದು.

**59. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ನಿರ್ದೇಶನವನ್ನು ನೀಡುವ ಅಧಿಕಾರ.-** (1) ವಿಶ್ವವಿದ್ಯಾಲಯವು ತನ್ನ ರಚನೆ ಅಥವಾ ನಿಗಮನವನ್ನು ನಿಯಂತ್ರಿಸುವ ಕಾನೂನಿಗೆ ಅನುಸಾರವಾಗಿ ತನ್ನ ಸಮಾಪನವನ್ನು ಉದ್ದೇಶಿಸಿದ್ದಲ್ಲಿ, ಅದು ಕನಿಷ್ಠ ಆರು ತಿಂಗಳ ಲಿಖಿತ ಪೂರ್ವ ಸೂಚನೆಯನ್ನು (ನೋಟಿಸು) ಸರ್ಕಾರಕ್ಕೆ ನೀಡತಕ್ಕದ್ದು.

(2) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಈ ಕೆಳಗಿನವುಗಳ ಬಗ್ಗೆ, ಎಂದರೆ:-

(i) ಪದವಿಯನ್ನು ನೀಡುವುದಕ್ಕಾಗಿ ಬೋಧನೆಯ ಗುಣಮಟ್ಟ;

(ii) ಶಿಕ್ಷಣದ ಗುಣಮಟ್ಟ;

(iii) ಉನ್ನತ ಶಿಕ್ಷಣದ ವ್ಯಾಪಾರೀಕರಣವನ್ನು ತಡೆಗಟ್ಟುವುದು;

(iv) ಅಧಿನಿಯಮದ ಉಪಬಂಧಗಳ ಉಲ್ಲಂಘನೆಯ ಬಗ್ಗೆ, ಯಾವುದಾದರೂ ಇದ್ದಲ್ಲಿ,

- ಇವುಗಳ ಬಗ್ಗೆ ನಿಯತಕಾಲಿಕ ಪರಿವೀಕ್ಷಣೆಯನ್ನು ನಡೆಸತಕ್ಕದ್ದು ಮತ್ತು ಸರ್ಕಾರಕ್ಕೆ ವರದಿಯನ್ನು ಕಳುಹಿಸತಕ್ಕದ್ದು.

(3) ದುರ್ವ್ಯವಹರಣೆ, ದುರಾಡಳಿತ ಮತ್ತು ಅಶಿಸ್ತು ಆಗಿದೆ ಎಂಬುದನ್ನು ಗುರುತಿಸಿದರೆ, ಸರ್ಕಾರವು, ವಿಶ್ವವಿದ್ಯಾಲಯದ ಆಡಳಿತವರ್ಗದವರಿಗೆ ಆಡಳಿತವನ್ನು ಸರಿಪಡಿಸಬೇಕೆಂದು ನಿರ್ದೇಶನಗಳನ್ನು ನೀಡತಕ್ಕದ್ದು. ನಿಯಮಿಸಬಹುದಾದ ಅಂಥ ಅವಧಿಯೊಳಗೆ ಆ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುವ ಹಕ್ಕು ಸರ್ಕಾರದಲ್ಲಿ ನಿಹಿತವಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ವಿಧಾನವು, ಸರ್ಕಾರವು ಈ ಸಂಬಂಧದಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು:

ಪರಂತು, ವಿಶ್ವವಿದ್ಯಾಲಯವು ತನ್ನ ಕಾರಣಗಳನ್ನು ಹೇಳಿಕೊಳ್ಳಲು ಸಮಂಜಸ ಅವಕಾಶಗಳನ್ನು ನೀಡಿದ ಹೊರತು ಅಂಥ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

(5) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೋಟಿಸನ್ನು ಸ್ವೀಕರಿಸಿದ ಮೇಲೆ, ಸರ್ಕಾರವು ಸಂಬಂಧಿಸಿದ ನಿಯಂತ್ರಣಾ ಪ್ರಾಧಿಕಾರದೊಡನೆ ಸಮಾಲೋಚಿಸಿ, ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ಅಥವಾ ವ್ಯಾಸಂಗ ಕ್ರಮವನ್ನು ಪರಿಸಮಾಪನಗೊಳಿಸಲು ಉದ್ದೇಶಿಸಿದ ದಿನಾಂಕದಿಂದ, ವಿಶ್ವವಿದ್ಯಾಲಯದಲ್ಲಿ ನಿಯತ ವ್ಯಾಸಂಗ ಕ್ರಮಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕೊನೆಯ ತಂಡ (ಬ್ಯಾಚ್) ತನ್ನ ವ್ಯಾಸಂಗ ಕ್ರಮವನ್ನು ಮುಗಿಸುವವರೆಗೆ ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು.

**60. ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು.–** (1) 59ನೇ ಪ್ರಕರಣದ (5)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ಅದರ ಆಡಳಿತಾತ್ಮಕ ವೆಚ್ಚಗಳನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ನೇಮಿಸಬಹುದಾದ ಅಂಥ ವಿಧಾನದಲ್ಲಿ ಭರಿಸತಕ್ಕದ್ದು.

(2) ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ವಿಶ್ವವಿದ್ಯಾಲಯದ ವೆಚ್ಚವನ್ನು ಭರಿಸಲು 48, 49, 50 ಮತ್ತು 51ನೇ ಪ್ರಕರಣಗಳ ಅಡಿಯಲ್ಲಿ ಉಲ್ಲೇಖಿಸಲಾದ ನಿಧಿಯು ಸಾಕಷ್ಟು ಇಲ್ಲದಿದ್ದಲ್ಲಿ, ಅಂಥ ವೆಚ್ಚವನ್ನು ಸರ್ಕಾರವು, ವಿಶ್ವವಿದ್ಯಾಲಯದ ಸ್ವತ್ತುಗಳು ಮತ್ತು ಆಸ್ತಿಗಳನ್ನು ವಿಲೇ ಮಾಡುವ ಮೂಲಕ ಭರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಸಮಾಪನೆಯು ದುರ್ವ್ಯವಹರಣೆ ಅಥವಾ ದುರಾಡಳಿತದ ಕಾರಣಗಳಿಗಾಗಿ ಆಗಿದ್ದರೆ, ಸರ್ಕಾರವು ಅಂಥ ದುರ್ವ್ಯವಹಾರಕ್ಕೆ ಅಥವಾ ದುರಾಡಳಿತಕ್ಕೆ ಹೊಣೆಯಾಗಿರುವ ವ್ಯಕ್ತಿಗಳನ್ನು ಗುರುತಿಸುವ ಮತ್ತು ಅವರ ಮೇಲೆ ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ದಂಡನೆಯನ್ನು ವಿಧಿಸಲು ಸ್ವತಂತ್ರವಾಗಿರತಕ್ಕದ್ದು.

**61. ತೊಂದರೆಗಳ ನಿವಾರಣೆಗೆ ಅಧಿಕಾರ.–** (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಅಥವಾ ಆದೇಶದ ಮೂಲಕ ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಐದು ವರ್ಷಗಳು ಮುಕ್ತಾಯವಾದ ತರುವಾಯ ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಅಧಿಸೂಚನೆ ಅಥವಾ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

**62. ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ.–** (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ಹೊರಡಿಸಲಾದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಉಭಯ ಸದನಗಳು ಒಪ್ಪಿದರೆ ತದನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ, ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ದತಿಯು ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವನ್ನು ಉಂಟುಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಜಿ.ಕೆ.ಬೋರೇಗೌಡ

ಸರ್ಕಾರದ ಕಾರ್ಯದರ್ಶಿ

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು (ಪಿ7) 500 ಪ್ರತಿಗಳು

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| ಭಾಗ-IVA | ಬೆಂಗಳೂರು, ಶನಿವಾರ, ಏಪ್ರಿಲ್ ೨೧, ೨೦೧೮ (ವೈಶಾಖ ೦೧, ಶಕ ವರ್ಷ ೧೯೪೦) | ನಂ. ೫೯೮ |
|---|---|---|
| Part-IVA | Bengaluru, Saturday, April 21, 2018 (Vyashaka 01, Shaka Varsha 1940) | No. 598 |

ಸಂಸದೀಯ ವ್ಯವಹಾರಗಳ ಸಚಿವಾಲಯ

ಅಧಿಸೂಚನೆ

**ಸಂಖ್ಯೆ: ಸಂವ್ಯಶಾಇ 04 ಶಾಸನ 2018, ಬೆಂಗಳೂರು, ದಿನಾಂಕ: 21-04-2018**

ಶ್ರೀ ಸತ್ಯ ಸಾಯಿ ಮಾನವ ಅಭ್ಯುದಯ ವಿಶ್ವವಿದ್ಯಾಲಯ ವಿಧೇಯಕ, 2018ಕ್ಕೆ 2018ರ ಏಪ್ರಿಲ್ ತಿಂಗಳ 19ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2018ರ ಕರ್ನಾಟಕ ಅಧಿನಿಯಮ ಸಂಖ್ಯೆ: 17 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2018ರ ಕರ್ನಾಟಕ ಅಧಿನಿಯಮ ಸಂಖ್ಯೆ: 17**

(2018ರ ಏಪ್ರಿಲ್ ತಿಂಗಳ 21ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಶ್ರೀ ಸತ್ಯ ಸಾಯಿ ಮಾನವ ಅಭ್ಯುದಯ ವಿಶ್ವವಿದ್ಯಾಲಯ ಅಧಿನಿಯಮ, 2018

(2018ರ ಏಪ್ರಿಲ್ ತಿಂಗಳ 19ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮೋದನೆಯನ್ನು ಪಡೆಯಲಾಗಿದೆ)

ಕಲೆ, ಸಾಹಿತ್ಯ, ಭಾಷೆಗಳು, ಮಾನವಿಕಗಳು, ವಾಣಿಜ್ಯ, ಶಿಕ್ಷಣ, ತತ್ವಶಾಸ್ತ್ರ, ವಿಜ್ಞಾನ, ಇಂಜನಿಯರಿಂಗ್ ಮತ್ತು ತಂತ್ರಜ್ಞಾನ, ವ್ಯವಸ್ಥಾಪನೆ, ಕಾನೂನು, ಸಂಗೀತ, ಜೀವನ, ಯೋಗ ಮತ್ತು ಆರೋಗ್ಯ ವಿಜ್ಞಾನಗಳು, ಶಾರೀರಿಕ ಮತ್ತು ಸಂಬಂಧಿತ ವಿಜ್ಞಾನ ಕೋರ್ಸುಗಳಲ್ಲಿ ಪದವಿ, ಸ್ನಾತಕೋತ್ತರ, ಡಾಕ್ಟೊರಲ್ ಮತ್ತು ಪೋಸ್ಟ್ ಡಾಕ್ಟೊರಲ್ ಮತ್ತು ಇತರ ಕೋರ್ಸುಗಳಿಗೆ ಮುಂದುವರಿಯುವ ಮತ್ತು ಅವುಗಳನ್ನು ಒಳಗೊಳ್ಳುವ ವಿಶ್ವವಿದ್ಯಾಲಯ ಶಿಕ್ಷಣದಲ್ಲಿ ಪ್ರಗತಿಯನ್ನು ಮತ್ತು ಅನ್ವೇಷಣೆಯನ್ನು ಬೆಂಬಲಿಸುವುದು, ಪ್ರೋತ್ಸಾಹಿಸುವುದು ಮತ್ತು ಕೈಗೊಳ್ಳುವುದು ಹಾಗೂ ಈ ಕ್ಷೇತ್ರಗಳಲ್ಲಿ ಸಲಹೆಯನ್ನೂ ಒಳಗೊಂಡಂತೆ ಸಂಶೋಧನೆ, ಪ್ರಗತಿ ಮತ್ತು ಜ್ಞಾನ ಪ್ರಸಾರಕ್ಕೆ ಉಪಬಂಧಗಳನ್ನು ಕಲ್ಪಿಸಲು ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಿಗಾಗಿ ಪ್ರಶಾಂತಿ ಬಾಲಮಂದಿರ ಟ್ರಸ್ಟ್ (ರಿ.), ನಾರ್ತ್ ಎಕ್ಸ್‌ಟೆನ್ಷನ್, ಚಿಕ್ಕಬಳ್ಳಾಪುರ (ತಾಲ್ಲೂಕು ಮತ್ತು ಜಿಲ್ಲೆ) ಇವರ ಮೂಲಕ ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದಕ್ಕಾಗಿ ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕಲೆ, ಸಾಹಿತ್ಯ, ಭಾಷೆಗಳು, ಮಾನವಿಕಗಳು, ವಾಣಿಜ್ಯ, ಶಿಕ್ಷಣ, ತತ್ವಶಾಸ್ತ್ರ, ವಿಜ್ಞಾನ, ಇಂಜನಿಯರಿಂಗ್ ಮತ್ತು ತಂತ್ರಜ್ಞಾನ, ವ್ಯವಸ್ಥಾಪನೆ, ಕಾನೂನು, ಸಂಗೀತ, ಜೀವನ, ಯೋಗ ಮತ್ತು ಆರೋಗ್ಯ ವಿಜ್ಞಾನಗಳು, ಶಾರೀರಿಕ ಮತ್ತು ಸಂಬಂಧಿತ ವಿಜ್ಞಾನ ಕೋರ್ಸುಗಳಲ್ಲಿ ಪದವಿ, ಸ್ನಾತಕೋತ್ತರ, ಡಾಕ್ಟೊರಲ್ ಮತ್ತು ಪೋಸ್ಟ್ ಡಾಕ್ಟೊರಲ್ ಮತ್ತು ಇತರ ಕೋರ್ಸುಗಳಿಗೆ ಮುಂದುವರಿಯುವ ಮತ್ತು ಅವುಗಳನ್ನು ಒಳಗೊಳ್ಳುವ ವಿಶ್ವವಿದ್ಯಾಲಯ ಶಿಕ್ಷಣದಲ್ಲಿ ಪ್ರಗತಿಯನ್ನು ಮತ್ತು ಅನ್ವೇಷಣೆಯನ್ನು ಬೆಂಬಲಿಸುವುದು, ಪ್ರೋತ್ಸಾಹಿಸುವುದು ಮತ್ತು ಕೈಗೊಳ್ಳುವುದು ಹಾಗೂ ಈ ಕ್ಷೇತ್ರಗಳಲ್ಲಿ ಸಲಹೆಯನ್ನೂ ಒಳಗೊಂಡಂತೆ ಸಂಶೋಧನೆ, ಪ್ರಗತಿ ಮತ್ತು ಜ್ಞಾನ ಪ್ರಸಾರಕ್ಕೆ ಉಪಬಂಧಗಳನ್ನು ಕಲ್ಪಿಸಲು ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ

ವಿಷಯಗಳಿಗಾಗಿ ಪ್ರಶಾಂತಿ ಬಾಲಮಂದಿರ ಟ್ರಸ್ಟ್ (ರಿ.), ನಾರ್ತ್ ಎಕ್ಸ್‌ಟೆನ್ಷನ್, ಚಿಕ್ಕಬಳ್ಳಾಪುರ (ತಾಲ್ಲೂಕು ಮತ್ತು ಜಿಲ್ಲೆ) ಇವರ ಮೂಲಕ ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೊಂಬತ್ತನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

## ಅಧ್ಯಾಯ – I

### ಪ್ರಾರಂಭಿಕ

**1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.**- (1) ಈ ಅಧಿನಿಯಮವನ್ನು ಶ್ರೀ ಸತ್ಯ ಸಾಯಿ ಮಾನವ ಅಭ್ಯುದಯ ವಿಶ್ವವಿದ್ಯಾಲಯ ಅಧಿನಿಯಮ, 2018 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. ಪರಿಭಾಷೆಗಳು.**- ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) "ಶೈಕ್ಷಣಿಕ ಪರಿಷತ್ತು (ಅಕೆಡೆಮಿಕ್ ಕೌನ್ಸಿಲ್)" ಎಂದರೆ, 26ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿಸಲಾದ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು;

(ಬಿ) "ಕಾರ್ಯಸೂಚಿ ವಿಷಯಗಳು", ಎಂದರೆ, ಪರಿನಿಯಮಗಳಲ್ಲಿ ಹೆಸರಿಸಬಹುದಾದ ಮತ್ತು ಒಂದು ಸಭೆಯಲ್ಲಿ ಆ ವಿಷಯಗಳನ್ನು ಮತ್ತು ಕಲಾಪಗಳನ್ನು ಅನುಮೋದಿಸಬಹುದೆಂದು ತಮ್ಮ ಸಮ್ಮತಿ ಸೂಚಿಸಿ ಕುಲಾಧಿಪತಿಯವರು ಮುಂಚಿತವಾಗಿಯೇ ಲಿಖಿತ ಅನುಮೋದನೆಯನ್ನು ಕೊಟ್ಟಿದ್ದಾಗ ಮಾತ್ರವೇ ಸಂದರ್ಭಾನುಸಾರ ಪ್ರಬಂಧಕರ ಮಂಡಳಿ ಅಥವಾ ವ್ಯವಸ್ಥಾಪನಾ ಮಂಡಳಿ ಅಥವಾ ಶೈಕ್ಷಣಿಕ ಪರಿಷತ್ತು ಅಥವಾ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳು ಅಥವಾ ಯಾವುದೇ ಸಮಿತಿಯವರು ಕಾರ್ಯಸೂಚಿಯಲ್ಲಿ ಸೇರಿಸಬಹುದಾದ ಅಥವಾ ಸಭೆಯಲ್ಲಿ ಚರ್ಚೆಗೆ ತೆಗೆದುಕೊಂಡು ನಿರ್ಣಯವನ್ನು ಕೊಡಬಹುದಾದ ಎಲ್ಲಾ ವಿಷಯಗಳು ಮತ್ತು ಕಲಾಪಗಳು;

(ಸಿ) "ಪ್ರಬಂಧಕರ ಮಂಡಳಿ" ಎಂದರೆ, 24ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಪ್ರಬಂಧಕರ ಮಂಡಳಿ;

(ಡಿ) "ವ್ಯವಸ್ಥಾಪನಾ ಮಂಡಳಿ" ಎಂದರೆ 25ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದಂತೆ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿ;

(ಇ) "ಕುಲಾಧಿಪತಿ", "ಸಹಕುಲಾಧಿಪತಿ" "ಕುಲಪತಿ", ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಕುಲಾಧಿಪತಿ, ಸಹಕುಲಾಧಿಪತಿ ಮತ್ತು ಕುಲಪತಿ;

(ಎಫ್) "ಕ್ಯಾಂಪಸ್" ಎಂದರೆ, ಅದು ರಾಜ್ಯದೊಳಗೆ ಇರುವ ವಿಶ್ವವಿದ್ಯಾಲಯವು ಸ್ಥಾಪಿಸಿದ, ನಿರ್ವಹಿಸುವ ಒಂದು ಕ್ಯಾಂಪಸ್;

(ಜಿ) "ಸಮಿತಿಗಳು" ಎಂದರೆ, ಈ ಅಧಿನಿಯಮದಡಿಯಲ್ಲಿ ರೂಪಿಸಲಾದ ಸಮಿತಿಗಳು ಅಥವಾ ಸಂದರ್ಭಾನುಸಾರವಾಗಿ ವಿಶ್ವವಿದ್ಯಾಲಯದ ವಿವಿಧ ಕಾರ್ಯಕರ್ತರು ರಚಿಸಿರುವ ಸಮಿತಿಗಳು ಮತ್ತು ಅದರಲ್ಲಿ ಶೋಧನಾ ಸಮಿತಿ, ನಾಮನಿರ್ದೇಶನ ಸಮಿತಿ, ಹಣಕಾಸು ಸಮಿತಿ, ಹಣಕಾಸು ಪರಿಷತ್ತು ಮತ್ತು ಅಂಥ ಇತರ ಸಮಿತಿಗಳು ಒಳಗೊಳ್ಳುತ್ತವೆ;

(ಎಚ್) "ಘಟಕ ಕಾಲೇಜು" ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುತ್ತಿರುವ ಕಾಲೇಜುಗಳು ಅಥವಾ ಕೇಂದ್ರಗಳು ಅಥವಾ ಸಂಸ್ಥೆಗಳು;

(ಐ) "ಹಣಕಾಸು ಸಮಿತಿ" ಎಂದರೆ, 28ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಹಣಕಾಸು ಸಮಿತಿ;

(ಜೆ) "ಸರ್ಕಾರ" ಎಂದರೆ, ಕರ್ನಾಟಕ ಸರ್ಕಾರ;

(ಕೆ) "ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳು" ಎಂದರೆ, ವಿಶ್ವವಿದ್ಯಾಲಯ ಅನುದಾನ ಆಯೋಗ, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು, ರಾಷ್ಟ್ರೀಯ ಬೋಧಕ ಶಿಕ್ಷಣ ಪರಿಷತ್ತು, ಭಾರತೀಯ ವೈದ್ಯಕೀಯ

ಪರಿಷತ್ತು, ಭಾರತೀಯ ಔಷಧ ವಿಜ್ಞಾನ ಪರಿಷತ್ತು, ರಾಷ್ಟ್ರೀಯ ಮೌಲ್ಯಮಾಪನ ಮತ್ತು ಅಧಿಮಾನ್ಯತಾ ಪರಿಷತ್ತು, ಭಾರತೀಯ ಕೃಷಿ ಸಂಶೋಧನಾ ಪರಿಷತ್ತು, ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಪರಿಷತ್ತು, ಬಾರ್ ಕೌನ್ಸಿಲ್ ಆಫ್ ಇಂಡಿಯಾ ಇತ್ಯಾದಿ ಮತ್ತು ಸರ್ಕಾರವನ್ನು ಒಳಗೊಂಡು ಉನ್ನತ ಶಿಕ್ಷಣದಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುವಂತೆ ನೋಡಿಕೊಳ್ಳುವುದಕ್ಕಾಗಿ ಗುಣಮಟ್ಟಗಳು ಮತ್ತು ಷರತ್ತುಗಳನ್ನು ವಿಧಿಸುವುದಕ್ಕಾಗಿ, ಕೇಂದ್ರ ಸರ್ಕಾರವು ಸ್ಥಾಪಿಸಿರುವ ಒಂದು ಸಂಸ್ಥೆ;

(ಎಲ್) "ನಿಯಮಿಸಲಾದುದು" ಎಂದರೆ, ಈ ಅಧಿನಿಯಮದಡಿಯಲ್ಲಿ ಸರ್ಕಾರವು ರಚಿಸಲಾದ ನಿಯಮಗಳ ಮೂಲಕ ನಿಯಮಿಸಲಾದುದು;

(ಎಂ) "ಒಂದು ಘಟಕ ಕಾಲೇಜಿಗೆ ಅಥವಾ ಕೇಂದ್ರಕ್ಕೆ ಸಂಬಂಧಪಟ್ಟಂತೆ ಪ್ರಾಂಶುಪಾಲರು ಅಥವಾ ನಿರ್ದೇಶಕರು" ಎಂದರೆ, ಘಟಕ ಕಾಲೇಜಿನ ಅಥವಾ ಕೇಂದ್ರದ ಮುಖ್ಯಸ್ಥರು ಮತ್ತು ಪ್ರಾಂಶುಪಾಲರು ಅಥವಾ ನಿರ್ದೇಶಕರು ಇಲ್ಲದಿದ್ದಲ್ಲಿ ಅಥವಾ ನೇಮಕವಾದ ಪ್ರಾಂಶುಪಾಲರ ಅಥವಾ ನಿರ್ದೇಶಕರ ಗೈರುಹಾಜರಿಯಲ್ಲಿ, ಪ್ರಾಂಶುಪಾಲರಾಗಿ ಅಥವಾ ನಿರ್ದೇಶಕರಾಗಿ ಕರ್ತವ್ಯ ನಿರ್ವಹಿಸಲು ಉಪಪ್ರಾಂಶುಪಾಲರು ಅಥವಾ ಜಂಟಿ ನಿರ್ದೇಶಕರು ಅಥವಾ ತಾತ್ಕಾಲಿಕವಾಗಿ ನೇಮಕಗೊಂಡಿರುವ ಯಾವುದೇ ಇತರ ವ್ಯಕ್ತಿಯೂ ಇದರಲ್ಲಿ ಒಳಗೊಳ್ಳುತ್ತಾರೆ;

(ಎನ್) "ಕುಲಸಚಿವರು" ಎಂದರೆ, ವಿಶ್ವವಿದ್ಯಾಲಯದ ಕುಲಸಚಿವರು;

(ಒ) "ಪ್ರಾದೇಶಿಕ ಕೇಂದ್ರ" ಎಂದರೆ, ರಾಜ್ಯದೊಳಗೆ ಅಧ್ಯಯನ ಕೇಂದ್ರಗಳ ಕಾರ್ಯವನ್ನು ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ಮಾಡುವ ಉದ್ದೇಶಕ್ಕಾಗಿ ಮತ್ತು ಅಂಥ ಕೇಂದ್ರಕ್ಕೆ ಕಾರ್ಯಕಾರಿ ಪರಿಷತ್ತು ವಹಿಸಿಕೊಡಬಹುದಾದ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸುವುದಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಅಥವಾ ನಿರ್ವಹಿಸಿಕೊಂಡುಬರುವ ಒಂದು ಕೇಂದ್ರ;

(ಪಿ) ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ "ಪ್ರಾಯೋಜಕ ಪ್ರಾಧಿಕಾರ" ಅಥವಾ "ಪ್ರಾಯೋಜಕ ಸಂಸ್ಥೆ" ಎಂದರೆ ಪ್ರಾಯೋಜಕ ಸೊಸೈಟಿ;

(ಕ್ಯೂ) "ಟ್ರಸ್ಟ್" ಎಂದರೆ, ನೋಂದಣಿ ಅಧಿನಿಯಮ, 1908ರ ಅಡಿಯಲ್ಲಿ ನೋಂದಣಿಯಾದ ಪ್ರಶಾಂತಿ ಬಾಲಮಂದಿರ ಟ್ರಸ್ಟ್ (ರಿ.), ನಾರ್ತ್ ಎಕ್ಸ್‌ಟೆನ್ಷನ್, ಚಿಕ್ಕಬಳ್ಳಾಪುರ (ತಾಲ್ಲೂಕು ಮತ್ತು ಜಿಲ್ಲೆ);

(ಆರ್) "ರಾಜ್ಯ" ಎಂದರೆ, ಕರ್ನಾಟಕ ರಾಜ್ಯ;

(ಎಸ್) "ಪರಿನಿಯಮಗಳು" ಮತ್ತು "ವಿನಿಯಮಗಳು" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಅನುಕ್ರಮವಾಗಿ ವಿಶ್ವವಿದ್ಯಾಲಯದ ಪರಿನಿಯಮಗಳು ಮತ್ತು ವಿನಿಯಮಗಳು;

(ಟಿ) "ಅಧ್ಯಯನ ಕೇಂದ್ರ" ಎಂದರೆ, ವಿದ್ಯಾರ್ಥಿಗಳಿಗೆ ಅಗತ್ಯವಾದ ಬುದ್ಧಿವಾದ, ಸಲಹೆಗಳನ್ನು ನೀಡುವ ಅಥವಾ ಇತರ ಯಾವುದೇ ನೆರವನ್ನು ನೀಡುವ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವು ರಾಜ್ಯದೊಳಗೆ ಸ್ಥಾಪಿಸಿದ ಮತ್ತು ನಿರ್ವಹಿಸಿಕೊಂಡುಬಂದ ಒಂದು ಕೇಂದ್ರ;

(ಯು) "ಅಧ್ಯಾಪಕರು" ಎಂದರೆ, ಒಬ್ಬ ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಒಂದು ಘಟಕ ಕಾಲೇಜಿನಲ್ಲಿ ಬೋಧಿಸುವುದಕ್ಕೆ ಅಥವಾ ಸಂಶೋಧನೆ ನಡೆಸುವುದಕ್ಕೆ ಅಥವಾ ಸಂಶೋಧನೆಗೆ ಮಾರ್ಗದರ್ಶನ ನೀಡುವುದಕ್ಕೆ ನೇಮಕವಾದ ಅಂಥ ಇತರ ವ್ಯಕ್ತಿ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗವು ನಿರ್ದಿಷ್ಟಪಡಿಸಿದ ಗುಣಮಟ್ಟಗಳಿಗೆ ಅನುಸಾರವಾಗಿ ಇರುವ ಘಟಕ ಕಾಲೇಜಿನ ಪ್ರಾಂಶುಪಾಲರು ಇದರಲ್ಲಿ ಒಳಗೊಳ್ಳುತ್ತಾರೆ;

(ವಿ) "ವಿಶ್ವವಿದ್ಯಾಲಯ" ಎಂದರೆ, ಈ ಅಧಿನಿಯಮದಡಿಯಲ್ಲಿ ಸ್ಥಾಪಿಸಿ ನಿಗಮಿತಗೊಳಿಸಲಾದ ಶ್ರೀ ಸತ್ಯ ಸಾಯಿ ಮಾನವ ಅಭ್ಯುದಯ ವಿಶ್ವವಿದ್ಯಾಲಯ;

(ಡಬ್ಲ್ಯೂ) "ವಿಶ್ವವಿದ್ಯಾಲಯ ಅನುದಾನಗಳ ಆಯೋಗ" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) 4ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ಆಯೋಗ;

(ಎಕ್ಸ್) "ಸಂದರ್ಶಕರು" ಎಂದರೆ, 13ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ವಿಶ್ವವಿದ್ಯಾಲಯದ ಸಂದರ್ಶಕರು.

## ಅಧ್ಯಾಯ– II

## ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

**3. ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ.**– (1) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಹಕ್ಕನ್ನು ಪ್ರಾಯೋಜಕ ಸೊಸೈಟಿಯು ಹೊಂದಿರತಕ್ಕದ್ದು.

(2) ಸೊಸೈಟಿಯು ರಾಜ್ಯ ಸರ್ಕಾರಕ್ಕೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವವನ್ನು ಸಲ್ಲಿಸತಕ್ಕದ್ದು.

(3) ಪ್ರಸ್ತಾವವು ಈ ಮುಂದಿನ ವಿವರಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಸೊಸೈಟಿಯ ವಿವರಗಳೊಂದಿಗೆ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು;

(ii) ವಿಶ್ವವಿದ್ಯಾಲಯದ ವ್ಯಾಪ್ತಿ ಮತ್ತು ಸ್ಥಾನಮಾನ ಹಾಗೂ ಭೂಮಿಯ ಲಭ್ಯತೆ;

(iii) ಪ್ರಾರಂಭದ ದಿನಾಂಕದಿಂದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳಬೇಕೆಂದಿರುವ ಅಧ್ಯಯನ ಮತ್ತು ಸಂಶೋಧನಾ ಕಾರ್ಯಕ್ರಮಗಳ ಸ್ವರೂಪ ಮತ್ತು ಬಗೆಗಳು;

(iv) ಪ್ರಾರಂಭಿಸಬೇಕೆಂದು ಪ್ರಸ್ತಾಪಿಸಿರುವ ವ್ಯಾಸಂಗ ವಿಭಾಗಗಳು (ಫ್ಯಾಕಲ್ಟಿಗಳು), ಅಧ್ಯಯನ ಕ್ರಮಗಳು ಮತ್ತು ಸಂಶೋಧನೆಗಳ ಸ್ವರೂಪ;

(v) ಕಟ್ಟಡಗಳು, ಸಲಕರಣೆಗಳು ಮತ್ತು ರಚನಾ ಸೌಕರ್ಯಗಳನ್ನು ಒದಗಿಸುವಂಥ ಕ್ಯಾಂಪಸ್ ಅಭಿವೃದ್ಧಿ;

(vi) ಪ್ರಾರಂಭದ ದಿನಾಂಕದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಗಾಗಿ ಬಂಡವಾಳ ವೆಚ್ಚದ ಹಂತಗಳು;

(vii) ಬಾಬುವಾರು ಆವರ್ತಕ ವೆಚ್ಚ, ಆರ್ಥಿಕ ಮೂಲಗಳು ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ತಗಲುವ ಅಂದಾಜು ವೆಚ್ಚ;

(viii) ಸಂಪನ್ಮೂಲ ಸಂಗ್ರಹಣೆಗಾಗಿ ಯೋಜನೆ ಮತ್ತು ಅದಕ್ಕೆ ಬಂಡವಾಳದಿಂದ ತಗಲುವ ವೆಚ್ಚ ಹಾಗೂ ಪ್ರತಿಯೊಂದು ಮೂಲಕ್ಕೂ ಮರು ಸಂದಾಯ ಮಾಡುವ ರೀತಿ;

(ix) ವಿದ್ಯಾರ್ಥಿಗಳಿಂದ ಶುಲ್ಕ ವಸೂಲು ಮಾಡಿ ಆಂತರಿಕವಾಗಿ ನಿಧಿ ಸಂಗ್ರಹಿಸುವ ಯೋಜನೆ, ಸಲಹಾ ಸೇವೆ ಮತ್ತು ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಿಗೆ ಸಂಬಂಧಿಸಿದ ಇತರ ಚಟುವಟಿಕೆಗಳಿಂದ ನಿರೀಕ್ಷಿತ ವರಮಾನಗಳು ಮತ್ತು ಇತರ ನಿರೀಕ್ಷಿತ ವರಮಾನಗಳು;

(x) ಘಟಕವೊಂದಕ್ಕೆ ತಗಲುವ ವೆಚ್ಚದ ವಿವರಗಳು, ಆರ್ಥಿಕವಾಗಿ ದುರ್ಬಲವಾದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕ, ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿ ವೇತನದಲ್ಲಿ ನೀಡುವ ರಿಯಾಯಿತಿ ಅಥವಾ ವಿನಾಯತಿಯ ಪರಿಮಿತಿಯ ವಿವರಗಳನ್ನು ಮತ್ತು ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳಿಗೆ ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳು ಪ್ರಾಯೋಜಿಸಿದ ವಿದ್ಯಾರ್ಥಿಗಳಿಗೆ ಮತ್ತು ಭಾರತವನ್ನುಳಿದು ಇತರ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ವಿಧಿಸತಕ್ಕ ಶುಲ್ಕದ ದರಗಳು ಬೇರೆ ಬೇರೆ ಇದ್ದಲ್ಲಿ ಅವುಗಳನ್ನು ಸೂಚಿಸುವ ಶುಲ್ಕ ರಚನೆಯ ವಿವರಗಳು;

(xi) ಸಂಬಂಧಪಟ್ಟ ವಿದ್ಯಾ ವಿಭಾಗದಲ್ಲಿ ಪ್ರಾಯೋಜಕ ಸೊಸೈಟಿಯು ದೊರಕಿಸಿಕೊಡಲಿರುವ ವರ್ಷಗಳ ಅನುಭವ ಮತ್ತು ಪರಿಣಿತಿ ಹಾಗೂ ಅದರ ಹಣಕಾಸಿನ ಸಂಪನ್ಮೂಲಗಳು;

(xii) ವಿಶ್ವವಿದ್ಯಾಲಯದಲ್ಲಿರುವ ಅಧ್ಯಯನ ಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕಾಗಿ ಇರುವ ವ್ಯವಸ್ಥೆ;

(xiii) ವಿಶ್ವವಿದ್ಯಾಲಯವು ಸ್ಥಾಪನೆಯಾಗುವುದಕ್ಕೆ ಮೊದಲು ನೆರವೇರಿಸಬೇಕೆಂದು ರಾಜ್ಯ ಸರ್ಕಾರವು ಅಗತ್ಯಪಡಿಸಬಹುದಾದ ಅಂಥ ಇತರ ಷರತ್ತುಗಳ ನೆರವೇರಿಕೆಯ ಹಂತ.

(4) ಪ್ರಾಯೋಜಕ ಸೊಸೈಟಿಯಿಂದ ಸ್ವೀಕರಿಸಿದ ಪ್ರಸ್ತಾವಗಳನ್ನು ಪರೀಕ್ಷಿಸಲು ರಾಜ್ಯ ಸರ್ಕಾರವು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಪದನಿಮಿತ್ತ ಸದಸ್ಯರಾದ ಮೂರು ಸದಸ್ಯರುಗಳನ್ನು ಒಳಗೊಂಡ ಒಂದು ಶೋಧನಾ ಸಮಿತಿಯನ್ನು ರಚಿಸತಕ್ಕದ್ದು ಮತ್ತು ಅದು ವಿಶ್ವವಿದ್ಯಾಲಯದ ಸ್ಥಾಪನೆಗೆ ರಾಜ್ಯ ಸರ್ಕಾರಕ್ಕೆ ಶಿಫಾರಸ್ಸನ್ನು ಮಾಡತಕ್ಕದ್ದು.

**4. ವಿಶ್ವವಿದ್ಯಾಲಯದ ಸ್ಥಾಪನೆ.**– (1) ರಾಜ್ಯ ಸರ್ಕಾರವು ಶೋಧನಾ ಸಮಿತಿಯು ಮಾಡಿದ ಶಿಫಾರಸ್ಸುಗಳನ್ನು ಪರಿಶೀಲಿಸಿದ ತರುವಾಯ ಮತ್ತು ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ,–

(i) ಸೊಸೈಟಿಯು ಸಾಕಷ್ಟು ಮೂಲ ಸೌಕರ್ಯದೊಂದಿಗೆ ವಿಶ್ವವಿದ್ಯಾಲಯವೊಂದನ್ನು ನಡೆಸಲು ಸಮರ್ಥವಾಗಿದೆ ಎಂದು ಅದು ಮನಗಂಡರೆ;

(ii) ಪ್ರದೇಶಕ್ಕನುಸಾರವಾಗಿ ಕೆಳಗೆ ನಿರ್ದಿಷ್ಟ ಪಡಿಸಿದ ವ್ಯಾಪ್ತಿಗೆ ಭೂಮಿಯ ಒಡೆತನವನ್ನು ಹೊಂದಿರತಕ್ಕದ್ದು, ಎಂದರೆ:-

(ಎ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯೊಳಗಿದ್ದರೆ ಇಪ್ಪತ್ತೈದು ಎಕರೆಗಳು;

(ಬಿ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯಿಂದ ಹೊರಗೆ ಇದ್ದು, ಆದರೆ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಪ್ರದೇಶದ ಒಳಗೆ ಇದ್ದರೆ ನಲವತ್ತು ಎಕರೆಗಳು;

(ಸಿ) ಭೂಮಿಯು (ಎ) ಮತ್ತು (ಬಿ) ಖಂಡಗಳಲ್ಲಿ ನಿರ್ದಿಷ್ಟಪಡಿಸಿದ ಸ್ಥಳಗಳನ್ನು ಹೊರತುಪಡಿಸಿದ್ದರೆ ಅರವತ್ತು ಎಕರೆಗಳಿಗಿಂತ ಕಡಿಮೆ ಇರತಕ್ಕದ್ದಲ್ಲ.

ಮೇಲೆ ನಿರ್ದಿಷ್ಟಪಡಿಸಿದ ಭೂಮಿಯು ಏಕ ಘಟಕ (ಸಿಂಗಲ್ ಬ್ಲಾಕ್) ದಲ್ಲಿರತಕ್ಕದ್ದು ಮತ್ತು ಇದು ಸಂಬಂಧಪಟ್ಟ ಸೊಸೈಟಿ ಅಥವಾ ನ್ಯಾಸ ಅಥವಾ ಪ್ರತಿಷ್ಠಾನ ಅಥವಾ ಸಂಸ್ಥೆ ಅಥವಾ ವಿಶ್ವವಿದ್ಯಾಲಯದ ಹೆಸರಿನಲ್ಲಿರತಕ್ಕದ್ದು. 3ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ಅಗತ್ಯಪಡಿಸಲಾದಂತೆ ಒದಗಿಸಿದ ವಿವರಗಳ ಆಧಾರದ ಮೇಲೆ ಸರ್ಕಾರವು 48ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಬೇಕೆಂದು ನ್ಯಾಸಕ್ಕೆ ನಿರ್ದೇಶನ ನೀಡಬಹುದು.

(2) ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಸ್ಥಾಪನೆಯ ತರುವಾಯ, ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, "ಶ್ರೀ ಸತ್ಯ ಸಾಯಿ ಮಾನವ ಅಭ್ಯುದಯ ವಿಶ್ವವಿದ್ಯಾಲಯ" ಎಂಬ ಹೆಸರಿನ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ರಾಜ್ಯದಲ್ಲಿ ಸ್ಥಾಪಿಸುವುದಕ್ಕೆ ಮಂಜೂರಾತಿಯನ್ನು ನೀಡಬಹುದು.

(3) ವಿಶ್ವವಿದ್ಯಾಲಯದ ಕೇಂದ್ರ ಕಾರ್ಯಸ್ಥಾನವು ನವನಿಹಾಲ್ ಗ್ರಾಮ, ಕಮಲಾಪುರ, ಕಲಬುರ್ಗಿಯಲ್ಲಿ ಇರತಕ್ಕದ್ದು. ವಿಶ್ವವಿದ್ಯಾಲಯದ ಸ್ಥಾಪನೆಯ ಐದು ವರ್ಷಗಳ ತರುವಾಯ ವಿಶ್ವವಿದ್ಯಾಲಯವು ತನ್ನ ಕ್ಯಾಂಪಸ್ಸುಗಳನ್ನು ಅಥವಾ ಪ್ರಾದೇಶಿಕ ಕೇಂದ್ರಗಳನ್ನು, ಅಧ್ಯಯನ ಕೇಂದ್ರಗಳನ್ನು ಕರ್ನಾಟಕದ ಯಾವುದೇ ಭಾಗದಲ್ಲಿ ಹೊಂದಿರತಕ್ಕದ್ದು ಮತ್ತು ಆ ಬಗ್ಗೆ ರಾಜ್ಯ ಸರ್ಕಾರದ ಪೂರ್ವಾನುಮತಿಯನ್ನು ಪಡೆದುಕೊಳ್ಳುವುದಕ್ಕೊಳಪಟ್ಟು ಹಾಗೂ ವಿಶ್ವವಿದ್ಯಾಲಯ ಅನುದಾನಗಳ ಆಯೋಗದ ಗುಣಮಟ್ಟಗಳಿಗನುಸಾರವಾಗಿ ಹೊಂದಿರತಕ್ಕದ್ದು.

(4) ಮೊದಲ ಕುಲಾಧಿಪತಿಯವರು, ಮೊದಲ ಸಹಕುಲಾಧಿಪತಿಯವರು, ಮೊದಲ ಕುಲಪತಿಯವರು, ಪ್ರಬಂಧಕ ಮಂಡಳಿಯ ಮೊದಲ ಸದಸ್ಯರುಗಳು, ವ್ಯವಸ್ಥಾಪನಾ ಮಂಡಳಿಯ ಹಾಗೂ ಶೈಕ್ಷಣಿಕ ಪರಿಷತ್ತಿನ ಮೊದಲ ಸದಸ್ಯರುಗಳು ಮತ್ತು ಇನ್ನು ಮುಂದೆ, ಅಂಥ ಅಧಿಕಾರಿಗಳು ಅಥವಾ ಸದಸ್ಯರುಗಳಾಗಬಹುದಾದಂಥ ಎಲ್ಲಾ ವ್ಯಕ್ತಿಗಳು, ಅಂಥ ಪದ ಅಥವಾ ಸದಸ್ಯತ್ವವನ್ನು ಹೊಂದಿರುವುದು ಮುಂದುವರೆಯುವವರೆಗೆ, ಒಂದು ನಿಗಮಿತ ನಿಕಾಯವನ್ನು ರಚಿಸತಕ್ಕದ್ದು. ಮತ್ತು ಅದು ವಿಶ್ವವಿದ್ಯಾಲಯದ ಹೆಸರಿನಲ್ಲಿ ದಾವೆ ಹೂಡಬಹುದು ಮತ್ತು ದಾವೆಗೊಳಗಾಗಬಹುದು.

(5) (2)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯವು ಸ್ಥಾಪನೆಗೆ ಮಂಜೂರಾತಿಯಾದ ಮೇಲೆ, ವಿಶ್ವವಿದ್ಯಾಲಯದ ಉದ್ದೇಶಕ್ಕಾಗಿ, ನ್ಯಾಸವು ಆರ್ಜಿಸಿದ, ಸೃಜಿಸಿದ, ಏರ್ಪಾಟು ಮಾಡಿಕೊಂಡ ಅಥವಾ ಕಟ್ಟಲ್ಪಟ್ಟ ಭೂಮಿ ಮತ್ತು ಇತರ ಸ್ಥಿರ ಮತ್ತು ಚರ ಸ್ವತ್ತು, ವಿಶ್ವವಿದ್ಯಾಲಯದಲ್ಲಿ ನಿಹಿತವಾಗಿರತಕ್ಕದ್ದು.

(6) ವಿಶ್ವವಿದ್ಯಾಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದ ಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂಥ ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

(7) ವಿಶ್ವವಿದ್ಯಾಲಯದಲ್ಲಿನ ಭೂಮಿ, ಕಟ್ಟಡ ಮತ್ತು ಇತರ ಸ್ವತ್ತುಗಳನ್ನು ವಿಶ್ವವಿದ್ಯಾಲಯದ ಉದ್ದೇಶಗಳಿಗೆ ಆನುಷಂಗಿಕವಾಗಿರುವುದನ್ನು ಹೊರತುಪಡಿಸಿ ಇತರ ಯಾವುದೇ ಉದ್ದೇಶಕ್ಕಾಗಿ ಬಳಸತಕ್ಕದ್ದಲ್ಲ.

**5. ಅನುದಾನಗಳು ಮತ್ತು ಹಣಕಾಸು ನೆರವು.**- ವಿಶ್ವವಿದ್ಯಾಲಯವು ಸ್ವಂತ ಧನಮೂಲವುಳ್ಳಲಾಭರಹಿತ ಸಂಸ್ಥೆಯಾಗಿರತಕ್ಕದ್ದು ರಾಜ್ಯದಿಂದ ಅಥವಾ ರಾಜ್ಯದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಇತರ ಸಂಸ್ಥೆ ಅಥವಾ ನಿಗಮದಿಂದ ಯಾವುದೇ ನಿರ್ವಹಣಾ ಸಹಾಯ ಅನುದಾನ ಅಥವಾ ಯಾವುದೇ ಹಣಕಾಸು ನೆರವನ್ನು ಹಕ್ಕಿನಿಂದ ಕೇಳತಕ್ಕದ್ದಲ್ಲ ಅಥವಾ ಅದನ್ನು ಪಡೆಯಲು ಹಕ್ಕನ್ನು ಹೊಂದಿರತಕ್ಕದ್ದಲ್ಲ:

ಪರಂತು, ರಾಜ್ಯವು,-

(ಎ) ಇತರ ರಾಜ್ಯ ಸರ್ಕಾರದ ಸಂಘಟನೆಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿರುವಂಥದ್ದೇ ಸಂಶೋಧನೆ, ಅಭಿವೃದ್ಧಿ ಮತ್ತಿತರ ಚಟುವಟಿಕೆಗಳಿಗಾಗಿ; ಅಥವಾ

(ಬಿ) ರಾಜ್ಯ ಸರ್ಕಾರದಿಂದ ನೆರವನ್ನು ಪಡೆಯುವ ಯಾವುದೇ ನಿರ್ದಿಷ್ಟ ಸಂಶೋಧನೆ ಅಥವಾ ಕಾರ್ಯಕ್ರಮಗಳಿಗಾಗಿ; ಮತ್ತು

(ಸಿ) ರಾಜ್ಯ ಕಾರ್ಯನೀತಿಯ ಬದಲಾವಣೆಗೆ ಒಳಪಟ್ಟು ಅಥವಾ ಅನ್ಯಥಾ ಇದೇ ಬಗೆಯ ವಿಶ್ವವಿದ್ಯಾಲಯಗಳಿಗೆ ಅವಕಾಶವನ್ನು ಕಲ್ಪಿಸುವುದಕ್ಕೆ ಅಥವಾ ಅವುಗಳ ಪ್ರಯೋಜನಕ್ಕಾಗಿ,

– ಅನುದಾನದ ಮೂಲಕ ಅಥವಾ ಅನ್ಯಥಾ ಹಣಕಾಸು ಬೆಂಬಲವನ್ನು ಒದಗಿಸಬಹುದು:

ಮತ್ತು ಪರಂತು, ವಿಶ್ವವಿದ್ಯಾಲಯವು, ಯಾವುದೇ ಇತರ ಮೂಲದಿಂದ ಯಾವುದೇ ಆರ್ಥಿಕ ನೆರವನ್ನು ಸ್ವೀಕರಿಸಬಹುದು.

6. **ಘಟಕ ಕಾಲೇಜು ಅಥವಾ ಕೇಂದ್ರ, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಅಥವಾ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದಕ್ಕೆ ಅಧಿಕಾರ.**–ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಐದು ವರ್ಷಗಳನ್ನು ಪೂರ್ಣಗೊಳಿಸಿದ ನಂತರ, ವಿಶ್ವವಿದ್ಯಾಲಯ ಅನುದಾನ ಆಯೋಗದ ಮತ್ತು ಇತರ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ಗುಣಮಟ್ಟಗಳಿಗೆ ಒಳಪಟ್ಟು, ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ, ವಿಶ್ವವಿದ್ಯಾಲಯವು, ರಾಜ್ಯದಲ್ಲಿ ತನಗೆ ಸೂಕ್ತವೆನಿಸುವಂಥ ಸ್ಥಳಗಳಲ್ಲಿ ಘಟಕ ಕಾಲೇಜುಗಳು, ಪ್ರಾದೇಶಿಕ ಕೇಂದ್ರಗಳು, ಹೆಚ್ಚುವರಿ ಕ್ಯಾಂಪಸ್‌ಗಳು, ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದಿರಬಹುದು.

7. **ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು.**– ವಿಶ್ವವಿದ್ಯಾಲಯವು, ತನ್ನ ಭವಿಷ್ಯದ್‌ದೃಷ್ಟಿ ಮತ್ತು ಧ್ಯೇಯೋದ್ದೇಶಗಳನ್ನು ಸಾಧಿಸಲು ಈ ಮುಂದಿನಂತೆ ವಿವಿಧ ಬಗೆಯ ಕಾರ್ಯತಂತ್ರಗಳನ್ನು ಕೈಗೊಳ್ಳಬಹುದು:–

(i) ಕಲೆ, ಸಾಹಿತ್ಯ, ಭಾಷೆಗಳು, ಮಾನವಿಕಗಳು, ವಾಣಿಜ್ಯ, ಶಿಕ್ಷಣ, ತತ್ವಶಾಸ್ತ್ರ, ವಿಜ್ಞಾನ, ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ, ವ್ಯವಸ್ಥಾಪನೆ, ಕಾನೂನು, ಸಂಗೀತ, ಜೀವನ, ಯೋಗ ಮತ್ತು ಆರೋಗ್ಯ ವಿಜ್ಞಾನಗಳು, ದೈಹಿಕ ಮತ್ತು ಸಂಬಂಧಿತ ವಿಜ್ಞಾನ ಕೋರ್ಸುಗಳಲ್ಲಿ ಪದವಿ, ಸ್ನಾತಕೋತ್ತರ, ಡಾಕ್ಟೊರಲ್ ಮತ್ತು ಪೋಸ್ಟ್ ಡಾಕ್ಟೊರಲ್ ಕೋರ್ಸುಗಳಿಗೆ ಮುಂದುವರಿಯುವ ಮತ್ತು ಅವುಗಳನ್ನು ಒಳಗೊಳ್ಳುವ ವಿಶ್ವವಿದ್ಯಾಲಯ ಶಿಕ್ಷಣದಲ್ಲಿ ಪ್ರಗತಿಯನ್ನು ಮತ್ತು ಅನ್ವೇಷಣೆಯನ್ನು ಬೆಂಬಲಿಸುವುದು, ಪ್ರೋತ್ಸಾಹಿಸುವುದು ಮತ್ತು ಕೈಗೊಳ್ಳುವುದು ಹಾಗೂ ಈ ಕ್ಷೇತ್ರಗಳಲ್ಲಿ ಸಲಹೆಯನ್ನೂ ಒಳಗೊಂಡಂತೆ ಸಂಶೋಧನೆ, ಪ್ರಗತಿ ಮತ್ತು ಜ್ಞಾನ ಪ್ರಸಾರಕ್ಕೆ ಉಪಬಂಧಗಳನ್ನು ಕಲ್ಪಿಸುವುದು;

(ii) ವಿದ್ಯಾರ್ಥಿಗಳಿಗೆ, ಬೋಧಕ ವೃಂದದ (ಫ್ಯಾಕಲ್ಟಿ) ಸದಸ್ಯರಿಗೆ ಮತ್ತು ಇತರರಿಗೆ ನಿರ್ದಿಷ್ಟ ಶೈಕ್ಷಣಿಕ ಮತ್ತು ಸಂಶೋಧನಾ ಕಾರ್ಯಕ್ರಮಗಳನ್ನು, ತರಬೇತಿ ಕಾರ್ಯಕ್ರಮಗಳನ್ನು ಮತ್ತು ವಿನಿಮಯ ಕಾರ್ಯಕ್ರಮಗಳನ್ನು ಪರಿಕಲ್ಪಿಸಲು, ವಿನ್ಯಾಸಗೊಳಿಸಲು, ಅಭಿವೃದ್ಧಿಪಡಿಸಲು ಇತರ ಯಾವುದೇ ವಿಶ್ವವಿದ್ಯಾಲಯಗಳು, ಸಂಶೋಧನಾ ಸಂಸ್ಥೆಗಳು, ಲಾಭರಹಿತ ಸಂಸ್ಥೆಗಳು, ಕೈಗಾರಿಕಾ ಸಂಸ್ಥೆಗಳು, ವೃತ್ತಿಪರ ಸಂಸ್ಥೆಗಳು ಅಥವಾ ಇತರ ಸಂಸ್ಥೆಗಳೊಂದಿಗೆ ಸಹಯೋಗವನ್ನು ಹೊಂದುವುದು;

(iii) ರಾಜ್ಯ ಸರ್ಕಾರದ ಪೂರ್ವ ಅನುಮೋದನೆಯೊಡನೆ, ಯಾವುದೇ ಸಂಸ್ಥೆಯೊಂದಿಗೆ ಸಹಯೋಗ ಹೊಂದಿ ಸಂಶೋಧನೆಯನ್ನು ಮತ್ತು ಹೊಸತನವನ್ನು ಬೆಳಕಿಗೆ ತರುವುದು;

(iv) ತಾನು ಸೂಕ್ತವೆಂದು ಭಾವಿಸಬಹುದಾದಂತೆ, ಕಲಿಕೆಯ ಅಂಥ ಶಾಖೆಗಳಲ್ಲಿ ಬೋಧನಾ ಮತ್ತು ಸಂಶೋಧನಾ ಸೌಲಭ್ಯಗಳನ್ನು ಒದಗಿಸಿ ಜ್ಞಾನ ಪ್ರಸಾರ ಮಾಡುವುದು ಮತ್ತು ಅದನ್ನು ಮುಂದುವರೆಸುವುದು ಹಾಗೂ ವಿಶೇಷವಾಗಿ ಪ್ರಸ್ತಾವಿತ ಕ್ಷೇತ್ರಗಳ ಸಂಬಂಧಿತ ಕೋರ್ಸುಗಳಲ್ಲಿ ಸಮಗ್ರ ವ್ಯಾಸಂಗ ವಿಷಯಗಳಿಗಾಗಿ ವಿಶೇಷ ಉಪಬಂಧ ಕಲ್ಪಿಸುವುದು ಮತ್ತು ವಿಶ್ವವಿದ್ಯಾಲಯದ ಅಂಥ ಇತರ ಉನ್ನತ ಶೈಕ್ಷಣಿಕ ಕಾರ್ಯಕ್ರಮಗಳಿಗಾಗಿ ಅಂತರವಿದ್ಯಾವಿಷಯಗಳ ಅಧ್ಯಯನ ಮತ್ತು ಸಂಶೋಧನೆಗೆ ಉತ್ತೇಜನ ನೀಡುವುದಕ್ಕೆ ಸೂಕ್ತ ಕ್ರಮ ಕೈಗೊಳ್ಳುವುದು;

(v) ಉನ್ನತ ಕಲಿಕೆಗೆ ಪ್ರವೇಶಾವಕಾಶಗಳನ್ನು ಮತ್ತು ನ್ಯಾಯಸಮ್ಮತತೆಗೆ ಉತ್ತೇಜನ ನೀಡುವ ದೃಷ್ಟಿಯಿಂದ, ಕಲಿಕೆಯ ವಿಧಾನಗಳು ಮತ್ತು ಸ್ಥಳಗಳು, ವ್ಯಾಸಂಗ ಕ್ರಮಗಳ ಸಂಯೋಜನೆ, ದಾಖಲಾತಿಗಾಗಿ ಅರ್ಹತೆ, ಪ್ರವೇಶದ ವಯಸ್ಸು, ಪರೀಕ್ಷೆಯನ್ನು ನಡೆಸುವುದು ಮತ್ತು ಕಾರ್ಯಕ್ರಮಗಳ ನಿರ್ವಹಣೆಗೆ ಸಂಬಂಧಿಸಿದಂತೆ ನಮ್ಯವಾದ (ಫ್ಲೆಕ್ಸಿಬಲ್) ಮತ್ತು ಮುಕ್ತವಾದ, ವಿಶ್ವವಿದ್ಯಾಲಯ ಮಟ್ಟದ ಶಿಕ್ಷಣದ ಅನ್ವೇಷಣಾ ಪದ್ಧತಿಯನ್ನು ಅಳವಡಿಸುವುದು ಹಾಗೂ ಜ್ಞಾನದ ಹೊಸ ಕ್ಷೇತ್ರಗಳಲ್ಲಿ ಉತ್ಕೃಷ್ಟತೆಗೆ ಪ್ರೋತ್ಸಾಹಿಸುವುದು, ಶೈಕ್ಷಣಿಕ ಮತ್ತು ಸಮನ್ವಯ ಕಲಿಕೆ, ಇವೆರಡಕ್ಕೂ ಸಮನಾದ ಪ್ರಾಮುಖ್ಯತೆಯನ್ನು ನೀಡುವುದು;

(vi) ಗುಣಮಟ್ಟದ ಶಿಕ್ಷಣಕ್ಕಾಗಿ ಕೊಡುಗೆಯನ್ನು ನೀಡಲು ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಸಂಪನ್ಮೂಲ ಕೇಂದ್ರಗಳನ್ನು ಅಭಿವೃದ್ಧಿಪಡಿಸುವುದು;

(vii) ವಿಶ್ವವಿದ್ಯಾಲಯದ ಸ್ಥಾಪನೆಯ ಐದು ವರ್ಷಗಳ ತರುವಾಯ ಕರ್ನಾಟಕದಲ್ಲಿ ವಿವಿಧ ಸ್ಥಳಗಳಲ್ಲಿ ಕ್ಯಾಂಪಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳು ಮತ್ತು ಘಟಕ ಕಾಲೇಜುಗಳನ್ನು ಸ್ಥಾಪಿಸುವುದು ಮತ್ತು ತಾಂತ್ರಿಕತೆ, ವೃತ್ತಿಪರತೆ, ಸಾಮಾನ್ಯ ಶಿಕ್ಷಣ ಮತ್ತು ಸಮಾಜ ಮತ್ತು ಮಾನವ ಅಭಿವೃದ್ಧಿಯಲ್ಲಿ ಶೈಕ್ಷಣಿಕ ಬದಲಾವಣೆಗೆ ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಕೊಡುಗೆ ನೀಡುವುದು ಮತ್ತು ಜ್ಞಾನವನ್ನು ಅಭಿವೃದ್ಧಿಪಡಿಸುವುದು;

(viii) ಮೌಲ್ಯಮಾಪನದ ವಿವಿಧ ಆಧುನಿಕ ವಿಧಾನಗಳ ಮೂಲಕ ಮಾಡಿದ ಮೌಲ್ಯಮಾಪನಕ್ಕೆ ಅನುಸಾರವಾಗಿ ಶಿಕ್ಷಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದುದರ ಆಧಾರದ ಮೇಲೆ ನೀಡಲು ಪದವಿಗಳನ್ನು, ಡಿಪ್ಲೋಮೋಗಳನ್ನು, ಪ್ರಮಾಣಪತ್ರಗಳನ್ನು ಮತ್ತು ಯಶೋಪತ್ರ ಪ್ರದಾನದಂಥ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(ix) ಉಪನ್ಯಾಸ ಮಾಲಿಕೆಗಳು, ವಿಚಾರ ಸಂಕಿರಣಗಳು, ಸಮ್ಮೇಳನಗಳು, ಕಾರ್ಯಾಂಗ ಶಿಕ್ಷಣ ಕಾರ್ಯಕ್ರಮಗಳು, ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳು, ಪ್ರಕಟಣೆಗಳು ಮತ್ತು ತರಬೇತಿ ಕಾರ್ಯಕ್ರಮಗಳು ಮತ್ತು ಕಾರ್ಯಸೂಚಿಗಳ ಮೂಲಕ ಜ್ಞಾನ ಪ್ರಸಾರ ಮಾಡುವುದು ಮತ್ತು ಶಿಕ್ಷಣ ಮತ್ತು ತತ್ಸಂಬಂಧಿತ ಅಭಿವೃದ್ಧಿ ಕ್ಷೇತ್ರಗಳ ವಿಷಯಗಳ ಬಗ್ಗೆ ಸಾರ್ವಜನಿಕ ಚರ್ಚೆಯನ್ನು ಏರ್ಪಡಿಸುವುದು;

(x) ರಾಜ್ಯ ಸರ್ಕಾರದ ಪೂರ್ವ ಅನುಮತಿಯೊಂದಿಗೆ, ಉತ್ತಮ ಗುಣಮಟ್ಟದ ಇತರ ಯಾವುವೇ ವಿಶ್ವವಿದ್ಯಾಲಯಗಳೊಂದಿಗೆ ಸಹಭಾಗಿಗಳಾಗಿ ವಿಶ್ವವಿದ್ಯಾಲಯದ ಬೋಧಕ ವೃಂದ (ಫ್ಯಾಕಲ್ಟಿ) ಮತ್ತು ಸಂಶೋಧಕರ ಅಭಿವೃದ್ಧಿ ಮತ್ತು ತರಬೇತಿಗಾಗಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು;

(xi) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದಕ್ಕಾಗಿ ಮತ್ತು ಉತ್ತೇಜಿಸುವುದಕ್ಕಾಗಿ ಅವಶ್ಯಕವಾದ ಮತ್ತು ಯುಕ್ತವಾದ ಕ್ರಮಗಳನ್ನು ಕೈಗೊಳ್ಳುವುದು;

(xii) ಭಾರತದಲ್ಲಿ ಶಿಕ್ಷಣ ಮತ್ತು ಇತರ ಅಭಿವೃದ್ಧಿ ವಲಯಗಳನ್ನು ವಿಸ್ತರಿಸುವುದಕ್ಕಾಗಿ ಸರ್ಕಾರವು ಅನುಮೋದಿಸಬಹುದಾದಂತೆ ಯಾವುವೇ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದು.

**8. ವಿಶ್ವವಿದ್ಯಾಲಯದ ಅಧಿಕಾರಗಳು.–** ವಿಶ್ವವಿದ್ಯಾಲಯವು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗೆ ಅನುಸಾರವಾಗಿ ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿರ್ಧರಿಸಬಹುದಾದಂತೆ ವಿಶ್ವವಿದ್ಯಾಲಯದ ಸ್ಥಾಪನೆಯ ದಿನಾಂಕದಿಂದ ಐದು ವರ್ಷಗಳ ತರುವಾಯ ಕ್ಯಾಂಪಸ್ಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಕರ್ನಾಟಕದಲ್ಲಿ ಸ್ಥಾಪಿಸುವುದು ಮತ್ತು ನಿರ್ವಹಿಸುವುದು;

(ii) ವಿಶ್ವವಿದ್ಯಾಲಯದ ಉದ್ದೇಶವನ್ನು ಕಾರ್ಯರೂಪಕ್ಕೆ ತರುವಲ್ಲಿ ಅಗತ್ಯವಾಗಬಹುದಾದ ಅಥವಾ ಕಾರ್ಯಸಾಧ್ಯವಾಗಬಹುದಾದ ಎಲ್ಲಾ ಅಂಥ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು;

(iii) ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಮತ್ತು ಷರತ್ತುಗಳಿಗೊಳಪಟ್ಟು ಪದವಿಗಳು ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರದಾನಮಾಡುವುದು;

(iv) ಪರಿನಿಯಮಗಳನ್ವಯ ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿ ವೇತನಗಳು ಮತ್ತು ಬಹುಮಾನಗಳು, ಅವಾರ್ಡುಗಳು, ಪಾರಿತೋಷಕಗಳು ಇತ್ಯಾದಿಗಳನ್ನು ಸ್ಥಾಪಿಸುವುದು ಮತ್ತು ನೀಡುವುದು;

(v) ಪರಿನಿಯಮಗಳಲ್ಲಿ ಅಥವಾ ಸಂದರ್ಭಾನುಸಾರವಾಗಿ ನಿಯಮಗಳಲ್ಲಿ ನಿಗದಿಪಡಿಸಬಹುದಾದ ಅಂಥ ಶುಲ್ಕಗಳು, ಬಿಲ್ಲುಗಳು, ಖರೀದಿ ಪಟ್ಟಿಗಳನ್ನು ಕೇಳಿಪಡೆದುಕೊಳ್ಳುವುದು ಮತ್ತು ಸ್ವೀಕರಿಸುವುದು ಹಾಗೂ ಚಾರ್ಜುಗಳನ್ನು ವಸೂಲು ಮಾಡುವುದು;

(vi) ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಪಠ್ಯೇತರ ಚಟುವಟಿಕೆಗಳಿಗೆ ಅವಕಾಶಗಳನ್ನು ಕಲ್ಪಿಸುವುದು;

(vii) ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಕ್ಯಾಂಪಸುಗಳ, ಪ್ರಾದೇಶಿಕ ಕೇಂದ್ರಗಳ, ಅಧ್ಯಯನ ಕೇಂದ್ರಗಳ ಫ್ಯಾಕಲ್ಟಿ, ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವುದು;

(viii) ವಿಶ್ವವಿದ್ಯಾಲಯದ ಅಥವಾ ಒಂದು ಘಟಕ ಕಾಲೇಜಿನ ಅಥವಾ ಕ್ಯಾಂಪಸ್ಸಿನ, ಪ್ರಾದೇಶಿಕ ಕೇಂದ್ರದ, ಅಧ್ಯಯನ ಕೇಂದ್ರದ ಉದ್ದೇಶಕ್ಕಾಗಿ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲ ನಿಷೇಧಿಸದಿರುವ, ಯಾವುದೇ ರೀತಿಯ ಸ್ವಯಂ ದೇಣಿಗೆಗಳು ಮತ್ತು ಕೊಡುಗೆಗಳನ್ನು ಸ್ವೀಕರಿಸುವುದು ಮತ್ತು ನ್ಯಾಸ ಮತ್ತು ದತ್ತಿ ಸ್ವತ್ತುಗಳೂ ಸೇರಿದಂತೆ, ಯಾವುದೇ ಚರ ಅಥವಾ ಸ್ಥಿರ ಸ್ವತ್ತನ್ನು ಆರ್ಜಿಸುವುದು, ಹೊಂದಿರುವುದು, ನಿರ್ವಹಿಸುವುದು, ನಡೆಸುವುದು ಮತ್ತು ಹಸ್ತಾಂತರ ಮಾಡುವುದು;

(ix) ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸಿಕೊಂಡು ಬರುವುದು ಹಾಗೂ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ ಅಥವಾ ಕೇಂದ್ರದ ವಿದ್ಯಾರ್ಥಿಗಳಿಗೆ ವಸತಿ ಸ್ಥಳಗಳಾಗಿ ಮಾನ್ಯತೆ ನೀಡುವುದು;

(x) ವಸತಿಯ ಮೇಲ್ವಿಚಾರಣೆ ಮಾಡುವುದು ಮತ್ತು ನಿಯಂತ್ರಣ ಮಾಡುವುದು ಹಾಗೂ ವಿದ್ಯಾರ್ಥಿಗಳು ಮತ್ತು ಎಲ್ಲಾ ಪ್ರವರ್ಗಗಳ ಸಿಬ್ಬಂದಿಗಳಲ್ಲಿ ಶಿಸ್ತು ನಿಯಂತ್ರಣ ಮಾಡುವುದು ಮತ್ತು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ನಡತೆ ಸಂಹಿತೆಯನ್ನು ರೂಪಿಸುವುದೂ ಒಳಗೊಂಡಂತೆ, ಅಂಥ ಸಿಬ್ಬಂದಿಗಳ ಸೇವಾಷರತ್ತುಗಳನ್ನು ನಿರೂಪಿಸುವುದು;

(xi) ಶೈಕ್ಷಣಿಕ, ಆಡಳಿತಾತ್ಮಕ ಮತ್ತು ಬೆಂಬಲ ಸಿಬ್ಬಂದಿಯ ಹುದ್ದೆಗಳನ್ನು ಮತ್ತು ಇತರ ಅವಶ್ಯ ಹುದ್ದೆಗಳನ್ನು ಸೃಜಿಸುವುದು;

(xii) ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ಉದ್ದೇಶಗಳಿಗಾಗಿ ಇತರ ವಿಶ್ವವಿದ್ಯಾಲಯಗಳೊಡನೆ ಸಹಕರಿಸುವುದು ಮತ್ತು ಸಹಯೋಗ ಹೊಂದುವುದು;

(xiii) ಶಿಕ್ಷಕರಿಗೆ, ಪಾಠಗಳನ್ನು ರಚಿಸುವವರಿಗೆ, ಮೌಲ್ಯಮಾಪಕರಿಗೆ ಮತ್ತಿತರ ಶೈಕ್ಷಣಿಕ ಸಿಬ್ಬಂದಿಗೆ ಪುನರ್ಮನನ ವ್ಯಾಸಂಗಕ್ರಮಗಳು, ಅಭಿಮುಖ ವ್ಯಾಸಂಗ ಕ್ರಮಗಳು, ಕಾರ್ಯಾಗಾರಗಳು, ವಿಚಾರಗೋಷ್ಠಿಗಳು ಮತ್ತಿತರ ಕಾರ್ಯಕ್ರಮಗಳನ್ನು ಏರ್ಪಡಿಸುವುದು ಮತ್ತು ನಡೆಸುವುದು;

(xiv) ಶೈಕ್ಷಣಿಕ ಪರಿಷತ್ತಿನ ಅನುಮೋದನೆಯೊಂದಿಗೆ ವಿಶ್ವವಿದ್ಯಾಲಯಕ್ಕೆ ಅಥವಾ ಘಟಕ ಕಾಲೇಜಿಗೆ, ಕೇಂದ್ರಗಳಿಗೆ, ಪ್ರಾದೇಶಿಕ ಕೇಂದ್ರಗಳಿಗೆ, ಅಧ್ಯಯನ ಕೇಂದ್ರಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮತ್ತು ಈ ಅಧಿನಿಯಮದಲ್ಲಿ ಕಲ್ಪಿಸಿದ ವ್ಯಾಪ್ತಿಗಿಂತ ಕಡಿಮೆಯಿಲ್ಲದಂತೆ ಕರ್ನಾಟಕದ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮಾನಕ ಗುಣಮಟ್ಟಗಳನ್ನು ನಿರ್ಧರಿಸುವುದು;

(xv) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಕಾರ್ಯರೂಪಕ್ಕೆ ತರಲು ಅವಶ್ಯವಾಗಬಹುದಾದಂಥ ಇತರ ಎಲ್ಲಾ ಕ್ರಮಗಳನ್ನು ಅಥವಾ ಕಾರ್ಯಗಳನ್ನು, ಅವು ಮೇಲೆ ಹೇಳಿದ ಅಧಿಕಾರಗಳಿಗೆ ಪ್ರಾಸಂಗಿಕವಾಗಿರಲಿ ಅಥವಾ ಇಲ್ಲದಿರಲಿ, ಕೈಗೊಳ್ಳುವುದು;

(xvi) ಪರೀಕ್ಷೆಗಳ ಆಧಾರದ ಮೇಲೆ ಅಥವಾ ಸರ್ಕಾರದಿಂದ ಅನುಮೋದಿತವಾದ ಇತರ ಯಾವುದೇ ಮೌಲ್ಯಮಾಪನ ವಿಧಾನದ ಆಧಾರದ ಮೇಲೆ ನೀಡಲು ಪದವಿಗಳು, ಡಿಪ್ಲೋಮಾಗಳು, ಪ್ರಮಾಣಪತ್ರಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಸ್ಥಾಪಿಸುವುದು;

(xvii) ಫಿಲಂಗಳು, ಕ್ಯಾಸೆಟ್‌ಗಳು, ಧ್ವನಿಸುರುಳಿಗಳು, ದೃಶ್ಯಸುರುಳಿಗಳು, ಸಿ.ಡಿ., ವಿ.ಸಿ.ಡಿ. ಮತ್ತು ಇತರ ತಂತ್ರಾಂಶಗಳೂ ಹಾಗೂ ಇತರ ಸಂಬಂಧಿತ ವಿದ್ಯುನ್ಮಾನ ಮತ್ತು ಮುದ್ರಣ ಮಾಧ್ಯಮ ಸೇರಿದಂತೆ ಬೋಧಕ ಸಾಮಗ್ರಿಗಳನ್ನು ತಯಾರಿಸುವುದಕ್ಕಾಗಿ ಅವಕಾಶ ಕಲ್ಪಿಸುವುದು;

(xviii) ಪ್ರಬಂಧಕ ಮಂಡಳಿಯ ಅನುಮೋದನೆಯೊಡನೆ ವಿಶ್ವವಿದ್ಯಾಲಯದ ಉದ್ದೇಶಗಳಿಗಾಗಿ ವಿಶ್ವವಿದ್ಯಾಲಯದ ಸ್ವತ್ತುಗಳನ್ನು ಭದ್ರತೆಯಾಗಿ ನೀಡಿ ಅಥವಾ ನೀಡದೆ ಹಣವನ್ನು ಪಡೆಯುವುದು, ಸಂಗ್ರಹಿಸುವುದು, ಚಂದಾದಾರರಾಗುವುದು ಮತ್ತು ಸಾಲ ಪಡೆಯುವುದು;

(xix) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುದೇ ಇತರ ಶೈಕ್ಷಣಿಕ ಸಂಸ್ಥೆಗಳ ಆಡಳಿತವನ್ನು ವಶಪಡಿಸಿಕೊಳ್ಳುವುದು, ವಹಿಸಿಕೊಳ್ಳುವುದು ಮತ್ತು ನಡೆಸುವುದು;

(xx) ಕಾರ್ಯಕಾರಿ ಪರಿಷತ್ತು ಪೂರ್ವಾನುಮೋದನೆಯೊಂದಿಗೆ ಸ್ವತ್ತುಗಳನ್ನು ಆರ್ಜಿಸುವುದು;

(xxi) ವಿಶ್ವವಿದ್ಯಾಲಯದ ಮೇಲಿನ ಉದ್ದೇಶಗಳಿಗೆ ಸಂಬಂಧಿಸಿದ ಅಥವಾ ಪ್ರಾಸಂಗಿಕವಾದ ಯಾವುದೇ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು.

9. **ವಿಶ್ವವಿದ್ಯಾಲಯವು ಎಲ್ಲಾ ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲರಿಗೂ ಮುಕ್ತವಾಗಿರತಕ್ಕದ್ದು.-** ವಿಶ್ವವಿದ್ಯಾಲಯದ ಪ್ರವೇಶಗಳು ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲಾ

ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು. ಎಲ್ಲಾ ಪ್ರವೇಶಗಳನ್ನು ಅರ್ಹತಾ ಪರೀಕ್ಷೆಗಳಲ್ಲಿನ ಅರ್ಹತೆಯ ಆಧಾರದ ಮೇಲೆ ಮಾಡತಕ್ಕದ್ದು:

ಪರಂತು, ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳ ಪ್ರವೇಶದಲ್ಲಿ ಶೇಕಡಾ ನಲವತ್ತರಷ್ಟನ್ನು ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ಮೀಸಲಿಡತಕ್ಕದ್ದು ಮತ್ತು ಪ್ರವೇಶಗಳನ್ನು ರಾಜ್ಯ ಸರ್ಕಾರವು ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡತಕ್ಕದ್ದು ಮತ್ತು ಸೀಟುಗಳನ್ನು ಅರ್ಹತ ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ರೂಪಿಸುವ ಮೀಸಲಾತಿ ನೀತಿಗೆ ಅನುಸಾರವಾಗಿ ಹಂಚಿಕೆ ಮಾಡತಕ್ಕದ್ದು:

ಮತ್ತು ಪರಂತು, ಯಾವುದೇ ಕೋರ್ಸಿನಲ್ಲಿ ಹತ್ತಕ್ಕಿಂತ ಕಡಿಮೆ ಸೀಟುಗಳು ಇರುವಲ್ಲಿ, ಸ್ನಾತಕೋತ್ತರ ಇಂಥ ಕೋರ್ಸುಗಳನ್ನು ಒಟ್ಟಿಗೆ ಒಂದುಗೂಡಿಸುವ ಮೂಲಕ ಮೀಸಲಿಡತಕ್ಕದ್ದು ಮತ್ತು ಯಾವುದೇ ಕೋರ್ಸಿನಲ್ಲಿ ಮೂರು ಸೀಟುಗಳಿಗಿಂತ ಕಡಿಮೆ ಇರುವಲ್ಲಿ, ಅವುಗಳನ್ನು ಸರದಿ ಸುತ್ತಿನಲ್ಲಿ ಮೀಸಲಿಡತಕ್ಕದ್ದು.

**10. ರಾಷ್ಟ್ರೀಯ ಅಧಿಮಾನ್ಯತೆ.–** ವಿಶ್ವವಿದ್ಯಾಲಯವು ಪ್ರಾರಂಭವಾದ ತರುವಾಯ ಆದಷ್ಟು ಬೇಗನೆ ಸಂಬಂಧಪಟ್ಟ ಶಾಸನಾತ್ಮಕ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳಿಂದ ಅಧಿಮಾನ್ಯತೆಯನ್ನು ಕೋರತಕ್ಕದ್ದು ಮತ್ತು ಖಾಸಗಿ ವಿಶ್ವವಿದ್ಯಾಲಯಗಳು ನಡೆಸುವ ಎಲ್ಲಾ ವ್ಯಾಸಂಗ ಕ್ರಮಗಳು ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ವಿನಿಯಮಗಳಿಗೆ ಅನುಸಾರವಾಗಿ ಇರತಕ್ಕದ್ದು.

**11. ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು.–** ಪ್ರಾಯೋಜಕ ಸಂಸ್ಥೆಯು ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದಂತೆ ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಇವುಗಳಲ್ಲಿ ಪ್ರತಿಯೊಂದನ್ನು ಪ್ರಾಯೋಜಕ ಸಂಸ್ಥೆಯು ತನ್ನ ವಿವೇಚನಾನುಸಾರ ಚಲಾಯಿಸಬಹುದು, ಎಂದರೆ:–

(i) ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಪುನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(ii) ವಿಶ್ವವಿದ್ಯಾಲಯದ ಪ್ರಥಮ ಪ್ರಬಂಧಕ ಮಂಡಳಿಯನ್ನು ರಚಿಸುವುದು;

(iii) ಪ್ರಬಂಧಕ ಮಂಡಳಿಯ ಅಧ್ಯಕ್ಷರನ್ನು ನಾಮನಿರ್ದೇಶಿಸುವುದು;

(iv) ಪ್ರಬಂಧಕ ಮಂಡಳಿಯ ಸದಸ್ಯರಾಗಿ ಮೂರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(v) ಕಾರ್ಯಕಾರಿ ಪರಿಷತ್ತಿನ ಸದಸ್ಯರಾಗಿ ಇಬ್ಬರು ವ್ಯಕ್ತಿಗಳನ್ನು ನಾಮ ನಿರ್ದೇಶಿಸುವುದು;

(vi) ವಿಶ್ವವಿದ್ಯಾಲಯದ ದತ್ತಿ ನಿಧಿಗೆ ದೇಣಿಗೆ ನೀಡಲು ನಿಧಿ ಮೂಲಗಳನ್ನು ನಿರ್ಧರಿಸುವುದು;

(vii) ವಿಶ್ವವಿದ್ಯಾಲಯದ ಹಣದ ವಿನಿಯೋಗ ಮತ್ತು ವೆಚ್ಚ ಮಾಡುವುದನ್ನು ನಿರ್ಧರಿಸುವುದು;

(viii) ಈ ಅಧಿನಿಯಮದಲ್ಲಿ ಉಪಬಂಧಿಸಿರುವ ವಿಧಾನದಲ್ಲಿ ಪ್ರಬಂಧಕ ಮಂಡಳಿಯ ಸಭೆಯಲ್ಲಿಯ ವಿವಾದಗಳನ್ನು ಬಗೆಹರಿಸುವುದು;

## ಅಧ್ಯಾಯ – III

## ವಿಶ್ವವಿದ್ಯಾಲಯದ ಅಧಿಕಾರಿಗಳು

**12. ವಿಶ್ವವಿದ್ಯಾಲಯದ ಅಧಿಕಾರಿಗಳು.–** ಈ ಮುಂದಿನವರು ವಿಶ್ವವಿದ್ಯಾಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:–

(i) ಸಂದರ್ಶಕರು;

(ii) ಸಹ-ಸಂದರ್ಶಕರು;

(iii) ಕುಲಾಧಿಪತಿಗಳು;

(iv) ಸಹ ಕುಲಾಧಿಪತಿಗಳು;

(v) ಕುಲಪತಿಗಳು;

(vi) ಕುಲಸಚಿವರು (ಆಡಳಿತ);

(vii) ಕುಲಸಚಿವರು (ಮೌಲ್ಯಮಾಪನ);

(viii) ಹಣಕಾಸು ಅಧಿಕಾರಿ; ಮತ್ತು

(ix) ಪರಿನಿಯಮಗಳ ಮೂಲಕ ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಘೋಷಿಸಬಹುದಾದಂಥ ಇತರ ಅಧಿಕಾರಿಗಳು.

**13. ಸಂದರ್ಶಕರು.–** (1) ಕರ್ನಾಟಕದ ಘನತೆವೆತ್ತ ರಾಜ್ಯಪಾಲರು ವಿಶ್ವವಿದ್ಯಾಲಯದ ಸಂದರ್ಶಕರಾಗಿರತಕ್ಕದ್ದು ಮತ್ತು ಸಂದರ್ಶಕರು ವಿಶ್ವವಿದ್ಯಾಲಯದ ಕಾರ್ಯನಿರ್ವಹಣೆಯ ಸುಧಾರಣೆಗಾಗಿ ಸಲಹೆಗಳನ್ನು ನೀಡಬಹುದು.

(2) ಸಂದರ್ಶಕರು, ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಸಂದರ್ಶಕರು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ವ್ಯವಹಾರಗಳಿಗೆ ಸಂಬಂಧಿಸಿದಂತೆ, ಯಾವುದೇ ಪತ್ರ ಅಥವಾ ಮಾಹಿತಿಯನ್ನು ತರಿಸಿಕೊಳ್ಳುವುದು.

(ii) ಸಂದರ್ಶಕರು, ಅವರು ಸ್ವೀಕರಿಸಿದ ಮಾಹಿತಿಯ ಆಧಾರದ ಮೇಲೆ ವಿಶ್ವವಿದ್ಯಾಲಯಗಳ ಯಾವುದೇ ಪ್ರಾಧಿಕಾರವು ಮಾಡಿದ ಯಾವುದೇ ಆದೇಶ, ನಡೆಸಿದ ವ್ಯವಹರಣೆಗಳು ಅಥವಾ ಕೈಗೊಂಡ ತೀರ್ಮಾನಗಳು, ಈ ಅಧಿನಿಯಮ, ವಿನಿಯಮಗಳು ಅಥವಾ ನಿಯಮಗಳಿಗೆ ಪೂರಕವಾಗಿಲ್ಲವೆಂದು ಮನಗಂಡರೆ ಅವರು ವಿಶ್ವವಿದ್ಯಾಲಯದ ಹಿತಾಸಕ್ತಿಯಿಂದ ತಾವು ಸೂಕ್ತವೆಂದು ಭಾವಿಸಬಹುದಾದಂಥ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಹಾಗೆ ಹೊರಡಿಸಿದ ನಿರ್ದೇಶನಗಳನ್ನು ಸಂಬಂಧಪಟ್ಟವರೆಲ್ಲರೂ ಪಾಲಿಸತಕ್ಕದ್ದು.

**14. ಸಹ–ಸಂದರ್ಶಕರು.–** (1) ಕರ್ನಾಟಕ ಸರ್ಕಾರದ ಮಾನ್ಯ ಉನ್ನತ ಶಿಕ್ಷಣ ಸಚಿವರು ವಿಶ್ವವಿದ್ಯಾಲಯದ ಸಹ–ಸಂದರ್ಶಕರಾಗಿರತಕ್ಕದ್ದು.

(2) ಸಂದರ್ಶಕರ ಅನುಪಸ್ಥಿತಿಯಲ್ಲಿ ಸಹ–ಸಂದರ್ಶಕರು ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**15. ಕುಲಾಧಿಪತಿಗಳು.–** (1) ಕುಲಾಧಿಪತಿಯವರನ್ನು ಪ್ರಾಯೋಜಕ ಸಂಸ್ಥೆಯು ನೇಮಿಸತಕ್ಕದ್ದು.

(2) ಪ್ರಾಯೋಜಕ ಸಂಸ್ಥೆಯ ಪ್ರಸ್ತುತ ಅಧ್ಯಕ್ಷರು ಮೊದಲನೇ ಕುಲಾಧಿಪತಿಗಳಾಗಿರತಕ್ಕದ್ದು, ಅವರು ತಮ್ಮ ಜೀವನಪರ್ಯಂತ ಅಥವಾ ಅವರು ತಮ್ಮ ಪದವನ್ನು ಬಿಟ್ಟುಕೊಡುವವರೆಗೆ ಕುಲಾಧಿಪತಿಗಳಾಗಿ ಪದಧಾರಣ ಮಾಡಿರತಕ್ಕದ್ದು.

(3) ತದನಂತರದ ಕುಲಾಧಿಪತಿಗಳು, ಅಂಥ ನೇಮಕಾತಿಯನ್ನು ಪರಿಗಣಿಸುವ ಸಂದರ್ಭದಲ್ಲಿ ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ, ಪ್ರಾಯೋಜಕ ಸಂಸ್ಥೆಯ ನ್ಯಾಸಧಾರಿಯಾಗಿರತಕ್ಕದ್ದು ಅಥವಾ ಶಿಕ್ಷಣ, ವಿಜ್ಞಾನ, ಸಂಸ್ಕೃತಿ ಅಥವಾ ಸಾರ್ವಜನಿಕ ಜೀವನ ಕ್ಷೇತ್ರಗಳಲ್ಲಿ ರಾಷ್ಟ್ರೀಯ ಮಟ್ಟದ ಛಾಪನ್ನು ಪಡೆದಿರುವ ಅಂಥ ಇತರ ವ್ಯಕ್ತಿಯಾಗಿರತಕ್ಕದ್ದು.

(4) ಹಾಗೆ ನೇಮಕಗೊಂಡ ತದನಂತರದ ಕುಲಾಧಿಪತಿಗಳು ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ಪದಧಾರಣ ಮಾಡತಕ್ಕದ್ದು.

(5) ಕುಲಾಧಿಪತಿಗಳು ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳ ಅಡಿಯಲ್ಲಿ ಅವರಿಗೆ ಪ್ರದಾನ ಮಾಡಬಹುದಾದಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು, ಅವುಗಳಲ್ಲಿ ಈ ಮುಂದಿನ ಅಧಿಕಾರಗಳು ಒಳಗೊಂಡಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುವುದು;

(ii) ಸಂದರ್ಶಕರ ಮತ್ತು ಸಹ–ಸಂದರ್ಶಕರಿಬ್ಬರ ಗೈರುಹಾಜರಿಯಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಘಟಿಕೋತ್ಸವಗಳಲ್ಲಿ ಅಧ್ಯಕ್ಷತೆಯನ್ನು ವಹಿಸುವುದು;

(iii) ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವುದು;

(iv) ಈ ಅಧಿನಿಯಮ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಅನುಸಾರವಾಗಿ ಕುಲಪತಿಗಳನ್ನು ನೇಮಿಸುವುದು ಅಥವಾ ಪುನರ್ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(v) ಈ ಅಧಿನಿಯಮದ 16ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ನಾಮನಿರ್ದೇಶಕ ಸಮಿತಿಯ ಸದಸ್ಯರಾಗಿ ಒಬ್ಬ ವ್ಯಕ್ತಿಯನ್ನು ನಾಮನಿರ್ದೇಶನ ಮಾಡುವುದು;

(vi) ಕುಲಪತಿಗಳು, ಕುಲಸಚಿವರು (ಆಡಳಿತ), ಕುಲಸಚಿವರು (ಮೌಲ್ಯಮಾಪನ), ಹಣಕಾಸು ಅಧಿಕಾರಿಗಳು ಹಾಗೂ ಡೀನ್ ಇವರ ನೇಮಕಾತಿಯನ್ನು ಪೂರ್ವಾನುಮೋದಿಸುವುದು;

(vii) ಪ್ರಬಂಧಕ ಮಂಡಳಿಯ ಸದಸ್ಯರನ್ನಾಗಿ ಇಬ್ಬರು ಶಿಕ್ಷಣ ತಜ್ಞರನ್ನು ನಾಮನಿರ್ದೇಶಿಸುವುದು;

(viii) ಮೊದಲ ಕುಲಪತಿಗಳು ಮತ್ತು ಹಣಕಾಸು ಅಧಿಕಾರಿಗಳನ್ನು ನೇಮಿಸುವುದು;

(ix) ಮೊದಲ ವ್ಯವಸ್ಥಾಪನಾ ಮಂಡಳಿ, ಹಣಕಾಸು ಸಮಿತಿ, ಸಂಶೋಧನಾ ಪರಿಷತ್ತು ಹಾಗೂ ಶೈಕ್ಷಣಿಕ ಪರಿಷತ್ತುಗಳನ್ನು ರಚಿಸುವುದು;

(x) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ ಕಾರ್ಯಸೂಚಿ ವಿಷಯಗಳನ್ನು ಮೂರ್ವಾನುಮೋದಿಸುವುದು;

(xi) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ (ಪ್ರಬಂಧಕ ಮಂಡಳಿಯ ಸಭೆಯಲ್ಲಿ ಉಂಟಾದ ವಿವಾದಗಳನ್ನು ಹೊರತುಪಡಿಸಿ) ವಿವಾದಗಳನ್ನು ಪರಿಹರಿಸುವುದು.

(6) ಪದಾಧಿಕಾರಿ ಅಥವಾ ಸಂಸ್ಥೆ ಮತ್ತು ವಿಶ್ವವಿದ್ಯಾಲಯದ ಯಾವುದೇ ಇತರ ಪದಾಧಿಕಾರಿ ಅಥವಾ ಸಂಸ್ಥೆಯ ನಡುವೆ ವಿವಾದಗಳು ಉಂಟಾದಲ್ಲಿ, ಆ ವಿವಾದವನ್ನು ಕುಲಾಧಿಪತಿಯವರ ಪರ್ಯಾಲೋಚನೆಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿವಾದದ ಸಂದರ್ಭದಲ್ಲಿ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**16. ಸಹ-ಕುಲಾಧಿಪತಿಗಳು.**- (1) ಶಿಕ್ಷಣ, ವಿಜ್ಞಾನ, ಸಂಸ್ಕೃತಿ ಅಥವಾ ಸಾರ್ವಜನಿಕ ಜೀವನದ ಕ್ಷೇತ್ರದಲ್ಲಿ ಶ್ರೇಷ್ಠನಾಗಿರುವ ವ್ಯಕ್ತಿಯನ್ನು ಪ್ರಾಯೋಜಕ ಸಂಸ್ಥೆಯು ಸಹ-ಕುಲಾಧಿಪತಿಯನ್ನಾಗಿ ನೇಮಕ ಮಾಡತಕ್ಕದ್ದು.

(2) ಸಹ-ಕುಲಾಧಿಪತಿಯು, ಕುಲಾಧಿಪತಿಯ ಗೈರುಹಾಜರಿಯಲ್ಲಿ ಆತನ ಎಲ್ಲಾ ಅಧಿಕಾರಗಳನ್ನು ಅಥವಾ ಕುಲಾಧಿಪತಿಯವರು ಸೂಚಿಸಿದ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಅಥವಾ ಪರಿನಿಯಮಗಳಲ್ಲಿ ಹೇಳಬಹುದಾದ ಅಂಥ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.

(3) ಸಹ-ಕುಲಾಧಿಪತಿಯು, ಕುಲಾಧಿಪತಿಯ ಗೈರು ಹಾಜರಿಯಲ್ಲಿ ಎಲ್ಲಾ ಸಮಿತಿಗಳ, ಸಭೆಗಳ ಮತ್ತು ಘಟಿಕೋತ್ಸವಗಳ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(4) ಕುಲಾಧಿಪತಿಯು, ತಾನು ಸೂಕ್ತವೆಂದು ಭಾವಿಸುವ ಯಾವುದೇ ಸಮಯದಲ್ಲಿ ಸಹ-ಕುಲಾಧಿಪತಿಯ ಸೇವೆಗಳನ್ನು ಮುಕ್ತಾಯಗೊಳಿಸಬಹುದು.

**17. ಕುಲಪತಿಗಳು.**- (1) (2)ನೇ ಉಪಪ್ರಕರಣದ ಉಪಬಂಧಗಳಿಗೆ ಅನುಸಾರವಾಗಿ ನಾಮನಿರ್ದೇಶಕ ಸಮಿತಿಯು ಶಿಫಾರಸ್ಸು ಮಾಡಿದ ಮೂರು ವ್ಯಕ್ತಿಗಳ ಪೈಕಿಯಿಂದ ಒಬ್ಬರನ್ನು ಮೂರು ವರ್ಷಗಳ ಅವಧಿಗಾಗಿ ಕುಲಪತಿಗಳನ್ನಾಗಿ, ಪರಿನಿಯಮಗಳಲ್ಲಿ ನಿಯಮಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರು ನೇಮಿಸತಕ್ಕದ್ದು. ಮೂರು ವರ್ಷಗಳ ಅವಧಿಯು ಮುಗಿದ ತರುವಾಯ, ಇದನ್ನು ಮೂರು ವರ್ಷಗಳ ಮತ್ತೊಂದು ಅವಧಿಗೆ ನವೀಕರಿಸಬಹುದು:

ಪರಂತು, ಕುಲಪತಿಯವರು, ತಮ್ಮ ಅವಧಿ ಮುಗಿದ ನಂತರವೂ ಹೊಸ ಕುಲಪತಿಯವರು ಸೇರಿಕೊಳ್ಳುವವರೆಗೆ ಪದದಲ್ಲಿ ಮುಂದುವರೆಯತಕ್ಕದ್ದು. ಆದಾಗ್ಯೂ ಈ ಅವಧಿಯು ಯಾವುದೇ ಸಂದರ್ಭದಲ್ಲಿ ಒಂದು ವರ್ಷವನ್ನು ಮೀರತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಹೇಳಿರುವ ನಾಮನಿರ್ದೇಶಕ ಸಮಿತಿಯಲ್ಲಿ ಈ ಮುಂದಿನ ವ್ಯಕ್ತಿಗಳು ಇರತಕ್ಕದ್ದು, ಎಂದರೆ:-

(i) ಕುಲಾಧಿಪತಿಯವರು ನಾಮನಿರ್ದೇಶಿಸಿದ ಒಬ್ಬ ವ್ಯಕ್ತಿ;

(ii) ಪ್ರಬಂಧಕ ಮಂಡಳಿಯ ಇಬ್ಬರು ನಾಮ ನಿರ್ದೇಶಿತರು, ಇವರಲ್ಲಿ ಒಬ್ಬರನ್ನು ಪ್ರಬಂಧಕ ಮಂಡಳಿಯು ಸಮಿತಿಯ ಸಂಚಾಲಕರೆಂದು ನಾಮನಿರ್ದೇಶಿಸತಕ್ಕದ್ದು.

(3) ನಾಮನಿರ್ದೇಶನ ಸಮಿತಿಯು, ಅರ್ಹತೆಯ ಆಧಾರದ ಮೇಲೆ ಕುಲಪತಿಯ ಹುದ್ದೆಗೆ ಸೂಕ್ತವಾದ ಮೂರು ವ್ಯಕ್ತಿಗಳ ಹೆಸರನ್ನು ಶಿಫಾರಸ್ಸು ಮಾಡತಕ್ಕದ್ದು ಮತ್ತು ಅದನ್ನು ಪ್ರತಿಯೊಬ್ಬ ವ್ಯಕ್ತಿಯ ವಿದ್ಯಾರ್ಹತೆ ಮತ್ತಿತರ ವಿಶಿಷ್ಟ ಪ್ರಶಸ್ತಿಗಳನ್ನು ತಿಳಿಸುವ ಒಂದು ಸಂಕ್ಷಿಪ್ತ ವರದಿಯೊಂದಿಗೆ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು.

(4) ಕುಲಪತಿಯವರು ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಾಹಕ ಮತ್ತು ಶೈಕ್ಷಣಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣವನ್ನು ಚಲಾಯಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯದ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೊಳಿಸತಕ್ಕದ್ದು:

ಪರಂತು, ಶಿಕ್ಷಕರ ನೇಮಕಾತಿಯನ್ನು ಹೊರತುಪಡಿಸಿ ಕೂಡಲೇ ಕ್ರಮವನ್ನು ಕೈಗೊಳ್ಳಬೇಕಾದ ತುರ್ತು ಸ್ವರೂಪದ ಯಾವುದೇ ಇತರ ವಿಷಯಗಳಲ್ಲಿ ಮತ್ತು ಅದನ್ನು ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ವಿಶ್ವವಿದ್ಯಾಲಯವು ಇದಕ್ಕಾಗಿ ಅಧಿಕೃತಗೊಳಿಸಿದ್ದ ಯಾವೊಬ್ಬ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ಇತರ ಸಂಸ್ಥೆಯು

ಕೂಡಲೇ ಕ್ರಮಕೈಗೊಳ್ಳುವುದು ಸಾಧ್ಯವಿರದಿರುವಾಗ ಕುಲಪತಿಯವರು ತಾನು ಸೂಕ್ತವೆಂದು ಭಾವಿಸಬಹುದಾದಂತಹ ಕ್ರಮವನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆದು ಕೈಗೊಳ್ಳತಕ್ಕದ್ದು.

(5) ಕುಲಪತಿಯವರು ಪರಿನಿಯಮಗಳು ಅಥವಾ ನಿಯಮಗಳಲ್ಲಿ ಹೇಳಲಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು:

ಪರಂತು, ಕುಲಪತಿಗಳ ಅಭಿಪ್ರಾಯದಲ್ಲಿ, ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಯಾವುದೇ ನಿರ್ಣಯವು, ಈ ಅಧಿನಿಯಮ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳು, ವಿನಿಯಮಗಳು ಅಥವಾ ನಿಯಮಗಳ ಮೂಲಕ ಪ್ರದತ್ತವಾದ ಅಧಿಕಾರದ ಹೊರಗಿದ್ದರೆ ಅಥವಾ ವಿಶ್ವವಿದ್ಯಾಲಯದ ಹಿತಾಸಕ್ತಿಗೆ ಪ್ರತಿಕೂಲವಾಗಬಹುದಾಗಿದ್ದರೆ, ಅದರ ನಿರ್ಣಯದ ದಿನಾಂಕದಿಂದ ಹದಿನೈದು ದಿನಗಳ ಒಳಗೆ ತನ್ನ ನಿರ್ಣಯವನ್ನು ಪರಿಷ್ಕರಿಸಲು ಸಂಬಂಧಪಟ್ಟ ಪ್ರಾಧಿಕಾರವನ್ನು ಆತನು ಕೋರತಕ್ಕದ್ದು ಮತ್ತು ಪ್ರಾಧಿಕಾರವು ಅಂಥ ನಿರ್ಣಯವನ್ನು ಸಂಪೂರ್ಣವಾಗಿ ಅಥವಾ ಭಾಗಶ:ವಾಗಿ ಪರಿಷ್ಕರಿಸಲು ನಿರಾಕರಿಸಿದ ಸಂದರ್ಭದಲ್ಲಿ ಅಥವಾ ಹದಿನೈದು ದಿನಗಳೊಳಗೆ ಯಾವುದೇ ನಿರ್ಣಯವನ್ನು ತೆಗೆದುಕೊಳ್ಳಲು ವಿಫಲವಾದಲ್ಲಿ, ನಂತರ ಅಂಥ ವಿಷಯವನ್ನು ಕುಲಾಧಿಪತಿಗಳಿಗೆ ಕಳುಹಿಸತಕ್ಕದ್ದು ಮತ್ತು ಈ ಬಗ್ಗೆ ಇವರ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

(6) ಕುಲಪತಿಯವರ ಸೇವೆಗಳನ್ನು, ಪ್ರಬಂಧಕ ಮಂಡಳಿಯ ಅನುಮೋದನೆಯೊಂದಿಗೆ ಮತ್ತು ಸಹಜ ನ್ಯಾಯದ ತತ್ವಗಳನ್ನು ಅನುಸರಿಸಿದ ನಂತರ ಹಾಗೂ ಶಿಸ್ತಿನ ಆಧಾರದ ಮೇಲೆ ಅಂತ್ಯಗೊಳಿಸುವ ಸಂದರ್ಭವೂ ಸೇರಿದಂತೆ, ಪ್ರಕರಣದ ಬಗ್ಗೆ ಕುಲಪತಿಯು ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡಿದ ತರುವಾಯ, ಕುಲಾಧಿಪತಿಯವರು ಅಂತ್ಯಗೊಳಿಸಬಹುದು.

(7) ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಸಂದರ್ಶಕರು, ಸಹ-ಸಂದರ್ಶಕರು ಮತ್ತು ಕುಲಾಧಿಪತಿಯವರ ಗೈರು ಹಾಜರಿಯ ಸಂದರ್ಭದಲ್ಲಿ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**18. ವ್ಯಾಸಂಗ ವಿಭಾಗಗಳ ಡೀನ್‌ಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಪರಿನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವ್ಯಾಸಂಗ ವಿಭಾಗಗಳ ಡೀನ್‌ಗಳನ್ನು ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**19. ಕುಲಸಚಿವರು (ಆಡಳಿತ).–** (1) ಕುಲಾಧಿಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಸಚಿವರು (ಆಡಳಿತ) ಇವರನ್ನು ನೇಮಕ ಮಾಡತಕ್ಕದ್ದು.

(2) ಪರಿನಿಯಮಗಳಲ್ಲಿ ಪರಿಭಾಷಿಸಿರುವಂಥ ಎಲ್ಲಾ ಕರಾರುಗಳನ್ನು ವಿಶ್ವವಿದ್ಯಾಲಯದ ಪರವಾಗಿ ಕುಲಸಚಿವರು ಮಾಡಿಕೊಳ್ಳತಕ್ಕದ್ದು ಮತ್ತು ಅದಕ್ಕೆ ಸಹಿ ಹಾಕತಕ್ಕದ್ದು.

(3) ಕುಲಸಚಿವರು ವಿಶ್ವವಿದ್ಯಾಲಯದ ಪರವಾಗಿ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಪರಿನಿಯಮಗಳಿಂದ ಪ್ರದತ್ತಗೊಳಿಸಬಹುದಾದಂಥ ಅಥವಾ ಕುಲಾಧಿಪತಿಯವರು ಮತ್ತು ಕುಲಪತಿಯವರು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು ವಿಶ್ವವಿದ್ಯಾಲಯದ ದಾಖಲೆಗಳು ಮತ್ತು ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು, ಕುಲಪತಿಯವರು ಅಥವಾ ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಅಂಥ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿತಕ್ಕದ್ದು.

**20. ಕುಲಸಚಿವರು (ಮೌಲ್ಯಮಾಪನ).–** (1) ಕುಲಾಧಿಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಸಚಿವರು (ಮೌಲ್ಯಮಾಪನ) ಇವರನ್ನು ನೇಮಕ ಮಾಡತಕ್ಕದ್ದು.

(2) ಕುಲಸಚಿವರು (ಮೌಲ್ಯಮಾಪನ) ಇವರು, ಪರಿನಿಯಮಗಳಲ್ಲಿ ಪರಿಭಾಷಿಸಲಾದಂತೆ ಕಾಲಕಾಲಕ್ಕೆ ವಿಶ್ವವಿದ್ಯಾಲಯದ ಪರೀಕ್ಷೆಗಳನ್ನು ನಡೆಸುವುದಕ್ಕೆ ಹೊಣೆಗಾರರಾಗಿರತಕ್ಕದ್ದು.

(3) ಕುಲಸಚಿವರು (ಮೌಲ್ಯಮಾಪನ) ಇವರು, ವಿಶ್ವವಿದ್ಯಾಲಯದ ಪರವಾಗಿ ಪರೀಕ್ಷೆಗೆ ಸಂಬಂಧಪಟ್ಟ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಪರಿನಿಯಮಗಳಿಂದ ಪ್ರದತ್ತಗೊಳಿಸಬಹುದಾದಂಥ ಅಥವಾ ಕುಲಾಧಿಪತಿಯವರು ಅಥವಾ ಸಹಕುಲಾಧಿಪತಿಯವರು ಅಥವಾ ಕುಲಪತಿಯವರು

ಕಾಲಕಾಲಕ್ಕೆ ಅಗತ್ಯಪಡಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು (ಮೌಲ್ಯಮಾಪನ) ವಿಶ್ವವಿದ್ಯಾಲಯದ ಪರೀಕ್ಷೆಗೆ ಸಂಬಂಧಿಸಿದ ದಾಖಲೆಗಳು, ಪದವಿಗಳು, ಪ್ರಮಾಣಪತ್ರಗಳು ಮತ್ತು ವಿಶ್ವವಿದ್ಯಾಲಯದ ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು ಅಥವಾ ಕುಲಪತಿಯವರು ಅಥವಾ ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಅಂಥ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿತಕ್ಕದ್ದು.

**21. ಹಣಕಾಸು ಅಧಿಕಾರಿ.**– ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು, ಪರಿನಿಯಮಗಳ ಮೂಲಕ ಪ್ರದತ್ತಗೊಳಿಸಬಹುದಾದ ಅಂಥ ವಿಧಾನದಲ್ಲಿ ಹಣಕಾಸು ಅಧಿಕಾರಿಯನ್ನು ನೇಮಕ ಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**22. ಇತರ ಅಧಿಕಾರಿಗಳು.**– ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ ನೇಮಕಾತಿಯ ವಿಧಾನ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಕರ್ತವ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ – IV

### ವಿಶ್ವವಿದ್ಯಾಲಯದ ಪ್ರಾಧಿಕಾರಗಳು

**23. ವಿಶ್ವವಿದ್ಯಾಲಯದ ಪ್ರಾಧಿಕಾರಗಳು.**– ಈ ಮುಂದಿನವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:–

(i) ಪ್ರಬಂಧಕ ಮಂಡಳಿ;

(ii) ವ್ಯವಸ್ಥಾಪನಾ ಮಂಡಳಿ;

(iii) ಶೈಕ್ಷಣಿಕ ಪರಿಷತ್ತು;

(iv) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು;

(v) ಹಣಕಾಸು ಸಮಿತಿ; ಮತ್ತು

(vi) ವಿಶ್ವವಿದ್ಯಾಲಯದ ಪ್ರಾಧಿಕಾರಗಳೆಂದು ಪರಿನಿಯಮಗಳ ಮೂಲಕ ಘೋಷಿಸಬಹುದಾದ ಅಂಥ ಇತರ ಪ್ರಾಧಿಕಾರಗಳು.

**24. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು.**– (1) ಪ್ರಬಂಧಕ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು – ಅಧ್ಯಕ್ಷರು;

(ii) ಸಹ–ಕುಲಾಧಿಕಪತಿಯವರು – ಸದಸ್ಯರು;

(iii) ಕುಲಪತಿಯವರು

(iv) ಕುಲಸಚಿವರು (ಆಡಳಿತ)

(v) ಕುಲಸಚಿವರು (ಮೌಲ್ಯಮಾಪನ)

(vi) ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(vii) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(viii) ರಾಜ್ಯ ಸರ್ಕಾರವು ನಾಮ ನಿರ್ದೇಶನ ಮಾಡಿದ ಆಡಳಿತವನ್ನು ಒಳಗೊಂಡಂತೆ ವ್ಯವಸ್ಥಾಪನೆ, ಹಣಕಾಸು ಅಥವಾ ಯಾವುದೇ ಇತರ ವಿಶೇಷ ಕ್ಷೇತ್ರದಲ್ಲಿನ ಒಬ್ಬರು ತಜ್ಞರು;

(ix) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಮೂವರು ವ್ಯಕ್ತಿಗಳು ಅವರ ಪೈಕಿ ಒಬ್ಬರು ಮಹಿಳೆಯಾಗಿರತಕ್ಕದ್ದು;

(x) ವಿಶ್ವವಿದ್ಯಾಲಯ ಅನುದಾನ ಆಯೋಗದ ನಾಮನಿರ್ದೇಶಿತ ಒಬ್ಬ ಸುಪ್ರಸಿದ್ಧ ಶಿಕ್ಷಣ ತಜ್ಞರು.

(2) ಕುಲಸಚಿವರು(ಆಡಳಿತ) ಇವರು ಪ್ರಬಂಧಕ ಮಂಡಳಿಯ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ಪ್ರಬಂಧಕ ಮಂಡಳಿಯ ಸದಸ್ಯರ ಪದಾವಧಿ, ಸರ್ಕಾರದಿಂದ ನಾಮನಿರ್ದೇಶಿತರಾದ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ನೇಮಕಾತಿ, ನವೀಕರಣ ಮತ್ತು ತೆಗೆದುಹಾಕುವುದು ಮುಂತಾದವುಗಳು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಾಧಿಪತಿಯವರು ಅಥವಾ ಸಹ ಕುಲಾಧಿಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರ ಗೈರುಹಾಜರಿಯಲ್ಲಿ ಕುಲಾಧಿಪತಿಯವರಿಂದ ನಾಮನಿರ್ದೇಶಿತರಾದ ಯಾರಾದರೂ ಒಬ್ಬರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು. ಅಂಥ ಸಭೆಯ ಅಧ್ಯಕ್ಷತೆಯನ್ನು ವಹಿಸುವುದಕ್ಕೆ ಕುಲಾಧಿಪತಿಯವರು ಯಾವೊಬ್ಬ ವ್ಯಕ್ತಿಯನ್ನೂ ನಾಮನಿರ್ದೇಶನ ಮಾಡಿರದಿದ್ದಲ್ಲಿ, ಸಭೆಯಲ್ಲಿ ಹಾಜರಿರುವ ಸದಸ್ಯರು ಸರಳ ಬಹುಮತದ ಮೂಲಕ ಅವರುಗಳ ಪೈಕಿಯಿಂದಲೇ ಆ ಸಭೆಗೆ ಮಾತ್ರವೇ ಅಧ್ಯಕ್ಷನನ್ನು ಚುನಾಯಿಸತಕ್ಕದ್ದು.

(5) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಿಗೆ, ಅಂಥ ಸಭೆಯಲ್ಲಿ ಹಾಜರಾಗುವ ಮತ್ತು ಮತದಾನ ನೀಡುವ ಮೂರು ಜನ ಸದಸ್ಯರು ಗಣಪೂರ್ತಿ (ಕೋರಂ) ಆಗಿರತಕ್ಕದ್ದು:

ಪರಂತು, ಪ್ರಬಂಧಕ ಮಂಡಳಿಯ ಯಾವುದೇ ಸಭೆಯ ಕೋರಂ ಪೂರ್ಣವಾಗಬೇಕಾದರೆ ಕುಲಾಧಿಪತಿಯವರು ಅಥವಾ ಸಹಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಿರುವುದು ಅವಶ್ಯವಾಗಿರತಕ್ಕದ್ದು ಮತ್ತು ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ನಾಮನಿರ್ದೇಶಿತರು ಹಾಜರಾಗದೇ ಇದ್ದಾಗ ಕುಲಪತಿಯವರು ಹಾಜರಿರುವುದು ಅವಶ್ಯವಾಗಿರತಕ್ಕದ್ದು.

(6) ಪ್ರಬಂಧಕ ಮಂಡಳಿಯು ವಿಶ್ವವಿದ್ಯಾಲಯದ ಪ್ರಧಾನ ಪ್ರಬಂಧಕ ಸಂಸ್ಥೆಯಾಗಿರತಕ್ಕದ್ದು ಮತ್ತು ಅದು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಕಗೊಳಿಸುವುದು;

(ii) ವಿಶ್ವವಿದ್ಯಾಲಯವು ಅನುಸರಿಸಬೇಕಾದ ಕಾರ್ಯನೀತಿಗಳನ್ನು ರಚಿಸುವುದು;

(iii) ಈ ಅಧಿನಿಯಮದ ಅಥವಾ ಪರಿನಿಯಮಗಳ ಅಥವಾ ನಿಯಮಗಳ ಉಪಬಂಧಗಳಿಗೆ ಅನುಗುಣವಾಗಿ ಇರದ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ತೀರ್ಮಾನಗಳನ್ನು ಪುನರೀಕ್ಷಿಸುವುದು;

(iv) ವಿಶ್ವವಿದ್ಯಾಲಯದ ಆಯವ್ಯಯ ಮತ್ತು ವಾರ್ಷಿಕ ವರದಿಗಳನ್ನು ಅನುಮೋದಿಸುವುದು;

(v) ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸುವುದು ಅಥವಾ ಈಗಾಗಲೇ ಇರುವ ಪರಿನಿಯಮಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವುದು ಅಥವಾ ನಿರಸನಗೊಳಿಸುವುದು;

(vi) ವಿಶ್ವವಿದ್ಯಾಲಯವನ್ನು ಸ್ವಯಂಸಮಾಪನಗೊಳಿಸುವ ನಿರ್ಧಾರವನ್ನು ತೆಗೆದುಕೊಳ್ಳುವುದು;

(vii) ಸರ್ಕಾರಕ್ಕೆ ಸಲ್ಲಿಸುವ ಪ್ರಸ್ತಾವಗಳನ್ನು ಅನುಮೋದಿಸುವುದು;

(viii) ಶುಲ್ಕ ನಿಯಂತ್ರಣ ಸಮಿತಿಗೆ ಮೂವರು ಸದಸ್ಯರನ್ನು ನಾಮನಿರ್ದೇಶನ ಮಾಡುವುದು;

(ix) ವಿಶ್ವವಿದ್ಯಾಲಯದ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕೆ ಅಪೇಕ್ಷಣೀಯವೆಂದು ಕಂಡುಬರುವಂಥ ತೀರ್ಮಾನಗಳನ್ನು ಮತ್ತು ಕ್ರಮಗಳನ್ನು ಕೈಗೊಳ್ಳುವುದು.

(7) ಪ್ರಬಂಧಕ ಮಂಡಳಿಯು ಒಂದು ವರ್ಷದಲ್ಲಿ ಕನಿಷ್ಠ ಮೂರು ಸಲ ಸಭೆ ಸೇರತಕ್ಕದ್ದು.

(8) ಪ್ರಬಂಧಕ ಮಂಡಳಿಯು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಸಮಯ ಮತ್ತು ಸ್ಥಳದಲ್ಲಿ ಸಭೆ ಸೇರತಕ್ಕದ್ದು.

**25. ವ್ಯವಸ್ಥಾಪನಾ ಮಂಡಳಿ.–** (1) ವ್ಯವಸ್ಥಾಪನಾ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಗಳು;

(ii) ಕುಲಸಚಿವರು (ಆಡಳಿತ);

(iii) ಕುಲಸಚಿವರು (ಮೌಲ್ಯಮಾಪನ);

(iv) ಹಣಕಾಸು ಅಧಿಕಾರಿ;

(v) ಪ್ರಾಯೋಜಕ ಸಂಸ್ಥೆಯ ಇಬ್ಬರು ನಾಮನಿರ್ದೇಶಿತರು;

(vi) ಕುಲಪತಿಗಳು ನಾಮನಿರ್ದೇಶಿಸಬಹುದಾದ ವಿದ್ಯಾಲಯಗಳ ಇಬ್ಬರು ಡೀನ್‌ಗಳು;

(2) ಕುಲಪತಿಯವರು ವ್ಯವಸ್ಥಾಪನಾ ಮಂಡಳಿಯ ಅಧ್ಯಕ್ಷರಾಗಿರತಕ್ಕದ್ದು ಮತ್ತು ಕುಲಸಚಿವರು (ಆಡಳಿತ) ವ್ಯವಸ್ಥಾಪನಾ ಮಂಡಳಿಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ವ್ಯವಸ್ಥಾಪನಾ ಮಂಡಳಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ವ್ಯವಸ್ಥಾಪನಾ ಮಂಡಳಿಯ ಎಲ್ಲಾ ಸಭೆಗಳಲ್ಲಿ ಯಾವಾಗಲೂ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು ಹಾಗೂ ಕುಲಪತಿಯವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೇ ಇದ್ದ ಸಂದರ್ಭದಲ್ಲಿ ಸಭೆಯಲ್ಲಿ ಹಾಜರಿರುವ ಸದಸ್ಯರು ಚುನಾಯಿಸಿದ ಯಾವುದೇ ಇತರ ಸದಸ್ಯರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ವ್ಯವಸ್ಥಾಪನಾ ಮಂಡಳಿಯ ಸಭೆಯಲ್ಲಿ ಯಾವುದೇ ವಿಷಯವನ್ನು ಕುರಿತು ವಿವಾದ ಉಂಟಾದಲ್ಲಿ ಸದರಿ ವಿಷಯವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯದ ಬಗ್ಗೆ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**26. ಶೈಕ್ಷಣಿಕ ಪರಿಷತ್ತು.**–(1) ಶೈಕ್ಷಣಿಕ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಕುಲಸಚಿವರು (ಆಡಳಿತ) – ಸದಸ್ಯರು

(iv) ಕುಲಸಚಿವರು (ಮೌಲ್ಯಮಾಪನ) – ಕಾರ್ಯದರ್ಶಿಗಳು

(v) ಎಲ್ಲಾ ವ್ಯಾಸಂಗ ವಿಭಾಗಗಳ ಡೀನ್‌ಗಳು – ಸದಸ್ಯರು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಶೈಕ್ಷಣಿಕ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಶೈಕ್ಷಣಿಕ ಸಂಸ್ಥೆಯಾಗಿರತಕ್ಕದ್ದು ಮತ್ತು ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಹಾಗೂ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**27. ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು.**– (1) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಸಂಶೋಧನಾ ಮತ್ತು ಅನ್ವೇಷಣಾ ಸಮಿತಿಯಾಗಿರತಕ್ಕದ್ದು ಹಾಗೂ ಸಂಶೋಧನಾ ಕ್ಷೇತ್ರಗಳ ಆದ್ಯತೆಯೂ ಒಳಗೊಂಡಂತೆ, ವಿಶ್ವವಿದ್ಯಾಲಯವು ಕೈಗೊಳ್ಳಬೇಕಾದ ಸಂಶೋಧನೆಯ ಬಗ್ಗೆ ಒಂದು ವ್ಯಾಪಕವಾದ ಪರಿಪೂರ್ಣ ಭವಿಷ್ಯದ್ ದೃಷ್ಟಿಯನ್ನು ಒದಗಿಸತಕ್ಕದ್ದು. ಈ ಪರಿಷತ್ತು, ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಮತ್ತು ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಸಂಶೋಧನೆ ಮತ್ತು ಅನ್ವೇಷಣಾ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಕುಲಸಚಿವರು (ಆಡಳಿತ) – ಸದಸ್ಯರು

(iii) ಕುಲಸಚಿವರು (ಮೌಲ್ಯಮಾಪನ) – ಸದಸ್ಯರು

(iv) ಸಂಶೋಧನೆ ಮತ್ತು ಅನ್ವೇಷಣೆಯ ಡೀನ್ – ಕಾರ್ಯದರ್ಶಿ

(v) ಸಂಶೋಧನೆ ಮತ್ತು ಅನ್ವೇಷಣಾ ವಿಭಾಗದ ಮುಖ್ಯಸ್ಥರು – ಸದಸ್ಯರು

(vi) ಎಲ್ಲಾ ವ್ಯಾಸಂಗ ವಿಭಾಗಗಳ ಡೀನ್‌ಗಳು – ಸದಸ್ಯರು ಮತ್ತು

(vii) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

**28. ಹಣಕಾಸು ಸಮಿತಿ.**– (1) ಹಣಕಾಸು ಸಮಿತಿ ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು ಅಥವಾ ಅವರ ನಾಮನಿರ್ದೇಶಿತರು – ಅಧ್ಯಕ್ಷರು

(ii) ಕುಲಪತಿಯವರು – ಸದಸ್ಯರು

(iii) ಕುಲಸಚಿವರು (ಆಡಳಿತ) – ಸದಸ್ಯರು

(iv) ಕುಲಸಚಿವರು (ಮೌಲ್ಯಮಾಪನ) - ಸದಸ್ಯರು

(v) ಹಣಕಾಸು ಅಧಿಕಾರಿ - ಕಾರ್ಯದರ್ಶಿ

(vi) ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು - ಸದಸ್ಯರು; ಮತ್ತು

(vii) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಹಣಕಾಸು ಸಮಿತಿಯು ಹಣಕಾಸಿನ ವಿಷಯಗಳನ್ನು ಕೈಗೊಳ್ಳುವ ವಿಶ್ವವಿದ್ಯಾಲಯದ ಪ್ರಧಾನ ಹಣಕಾಸು ಸಂಸ್ಥೆಯಾಗಿರತಕ್ಕದ್ದು ಹಾಗೂ ಅದು ಈ ಅಧಿನಿಯಮ, ನಿಯಮಗಳು ಮತ್ತು ಪರಿನಿಯಮಗಳ ಉಪಬಂಧಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಹಣಕಾಸು ವಿಷಯಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**29. ಇತರ ಪ್ರಾಧಿಕಾರಗಳು.–** ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ರಚನೆ, ಅಧಿಕಾರಗಳು ಹಾಗೂ ಪ್ರಕಾರ್ಯಗಳು ಪರಿನಿಯಮಗಳಿಂದ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

**30. ಒಂದು ಪ್ರಾಧಿಕಾರದ ಅಥವಾ ಸಂಸ್ಥೆಯ ಸದಸ್ಯತ್ವಕ್ಕೆ ಅನರ್ಹತೆ.–** ವಿಶ್ವವಿದ್ಯಾಲಯದ ಸಂಸ್ಥೆಗಳ ಯಾವುವೇ ಪ್ರಾಧಿಕಾರಗಳ ಒಬ್ಬ ವ್ಯಕ್ತಿಯು,–

(ಎ) ಅಸ್ವಸ್ಥ ಚಿತ್ತನಾಗಿದ್ದು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿಸಲ್ಪಟ್ಟಿದ್ದರೆ;

(ಬಿ) ಅವಿಮುಕ್ತ ದಿವಾಳಿಯಾಗಿದ್ದರೆ;

(ಸಿ) ನೈತಿಕ ಅಧಃಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದರೆ;

(ಡಿ) ಖಾಸಗಿ ಬೋಧನಾ ತರಗತಿಗಳನ್ನು ನಡೆಸುತ್ತಿದ್ದರೆ ಅಥವಾ ಸ್ವತಃ ನಿರತನಾಗಿದ್ದರೆ;

(ಇ) ಯಾವುದೇ ವಿಧದಲ್ಲಿ, ಎಲ್ಲಿಯೇ, ಯಾವುದೇ ಪರೀಕ್ಷೆಯನ್ನು ನಡೆಸುವಲ್ಲಿ ಅನುಚಿತ ಅಭ್ಯಾಸದಲ್ಲಿ ತೊಡಗಿದ್ದಕ್ಕಾಗಿ ಅಥವಾ ಉತ್ತೇಜಿಸಿದ್ದಕ್ಕಾಗಿ ದಂಡಿತನಾಗಿದ್ದರೆ;

(ಎಫ್) ಪ್ರಾಯೋಜಿತ ಸಂಸ್ಥೆಯು ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಯಾವೊಬ್ಬ ಸದಸ್ಯನನ್ನು ಆ ಪದವನ್ನು ಹೊಂದಿರುವುದಕ್ಕೆ ಅರ್ಹನಲ್ಲನೆಂದು ಲಿಖಿತದಲ್ಲಿ ಅಭಿಪ್ರಾಯ ನೀಡಿದಾಗಲೆಲ್ಲಾ,

–ಸದಸ್ಯನಾಗಿರುವುದಕ್ಕೆ ಅನರ್ಹನಾಗತಕ್ಕದ್ದು.

**31. ಖಾಲಿಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಕಾರ್ಯ ಅಥವಾ ವ್ಯವಹರಣೆಗಳು ಕೇವಲ ಅದರಲ್ಲಿ ಯಾವುದೇ ಖಾಲಿಸ್ಥಾನ ಇದೆ ಎಂಬ ಕಾರಣದಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣದಿಂದ ಮಾತ್ರವೇ ಅಸಿಂಧುವಾಗತಕ್ಕದ್ದಲ್ಲ.

**32. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು.–** (1) ಯಾವುವೇ ಕಾರ್ಯಸೂಚಿ ವಿಷಯಗಳನ್ನು ಕುಲಾಧಿಪತಿಯವರ ಪೂರ್ವಾನುಮೋದನೆಯನ್ನು ಪಡೆಯದೇ ಪ್ರಬಂಧಕ ಮಂಡಳಿಯ ಅಥವಾ ಕಾರ್ಯಕಾರಿ ಪರಿಷತ್ತು ಅಥವಾ ಯಾವುದೇ ಸಮಿತಿಯ ಸಭೆಗಳ ಕಾರ್ಯಸೂಚಿ ವಿಷಯಗಳಲ್ಲಿ ಸೇರಿಸತಕ್ಕದ್ದಲ್ಲ ಅಥವಾ ಚರ್ಚೆಗೆ ತೆಗೆದುಕೊಳ್ಳತಕ್ಕದ್ದಲ್ಲ ಮತ್ತು ತೀರ್ಮಾನಿಸತಕ್ಕದ್ದಲ್ಲ.

(2) ಈ ಅಧಿನಿಯಮದ ಯಾವುದೇ ಉಪಬಂಧಗಳನ್ನು ಪಾಲಿಸದೆ ಇರುವ ಸಂದರ್ಭದಲ್ಲಿ, ಕುಲಾಧಿಪತಿಯವರು ವಿಶ್ವವಿದ್ಯಾಲಯದ ಯಾವುದೇ ಪದಾಧಿಕಾರಿ ಅಥವಾ ಸಂಸ್ಥೆಯು ತೆಗೆದುಕೊಂಡ ಎಲ್ಲಾ ತೀರ್ಮಾನಗಳನ್ನು ವಿಪರ್ಯಾಯಗೊಳಿಸುವ ಮೂಲಕ ಪರಿಹಾರ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಅಧಿಕಾರವನ್ನು ಎಲ್ಲಾ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಅಂಥ ಪರಿಹಾರ ಕ್ರಮದ ಪರಿಣಾಮವಾಗಿ ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ವಿಶ್ವವಿದ್ಯಾಲಯದ ಪದಾಧಿಕಾರಿ ಅಥವಾ ಸಂಸ್ಥೆಯು ಕೈಗೊಂಡಿದ್ದ ಎಲ್ಲಾ ಅಂಥ ಕ್ರಮಗಳು, ಮೊದಲಿನಿಂದಲೂ ಶೂನ್ಯ ಮತ್ತು ಅಕೃತ ಎಂದು ಭಾವಿಸತಕ್ಕದ್ದು ಹಾಗೂ ತತ್ಪರಿಣಾಮವಾಗಿ, ಉಪಬಂಧ ಪಾಲಿಸದೇ ಇದ್ದ ವಿಷಯ ಅಥವಾ ನಿರ್ಧಾರದ ಸಂಬಂಧದಲ್ಲಿ ಅದಕ್ಕೆ ಮುಂಚೆ ಇದ್ದ ವಸ್ತುಸ್ಥಿತಿಯೇ ಮುಂದುವರಿಯತಕ್ಕದ್ದು.

## ಅಧ್ಯಾಯ – V

## ಪರಿನಿಯಮಗಳು ಮತ್ತು ವಿನಿಯಮಗಳು

33. **ಪರಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಪರಿನಿಯಮಗಳು ವಿಶ್ವವಿದ್ಯಾಲಯಕ್ಕೆ ಮತ್ತು ಸಿಬ್ಬಂದಿಗೆ ಸಂಬಂಧಿಸಿದ ಎಲ್ಲಾ ಅಥವಾ ಯಾವುದೇ ವಿಷಯಕ್ಕೆ ಈ ಕೆಳಗಿನಂತೆ ಉಪಬಂಧ ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಕಾರ್ಯಕಲಾಪಗಳನ್ನು ನಡೆಸುವ ಮತ್ತು ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸದಿರುವ ಸಂಸ್ಥೆಗಳ ರಚನೆಯ ಕಾರ್ಯವಿಧಾನ;

(ii) 52ನೇ ಪ್ರಕರಣಕ್ಕೆ ಒಳಪಟ್ಟು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ವಿಶ್ವವಿದ್ಯಾಲಯ ದತ್ತಿ ನಿಧಿ, ಸಾಮಾನ್ಯ ನಿಧಿ ಹಾಗೂ ಅಭಿವೃದ್ಧಿ ನಿಧಿಗಳ ನಿರ್ವಹಣೆ;

(iii) ಕುಲಪತಿಗಳು, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರ ನೇಮಕಾತಿಯ ನಿಬಂಧನೆಗಳು ಹಾಗೂ ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಪ್ರಕಾರ್ಯಗಳು;

(iv) ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ, ಅಧ್ಯಾಪಕರ ಮತ್ತು ನೌಕರರ ನೇಮಕಾತಿ ವಿಧಾನ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(v) ವಿಶ್ವವಿದ್ಯಾಲಯ ಹಾಗೂ ಅದರ ಅಧಿಕಾರಿಗಳು, ವ್ಯಾಸಂಗ ವಿಭಾಗದ (ಫ್ಯಾಕಲ್ಟಿ) ಸದಸ್ಯರು, ನೌಕರರು ಹಾಗೂ ವಿದ್ಯಾರ್ಥಿಗಳ ನಡುವೆ ಉಂಟಾದ ವಿವಾದಗಳನ್ನು ಪರಿಹರಿಸುವ ಕಾರ್ಯವಿಧಾನ;

(vi) ವಿಭಾಗಗಳು ಮತ್ತು ವ್ಯಾಸಂಗ ವಿಭಾಗಗಳ (ಫ್ಯಾಕಲ್ಟಿಗಳ) ಸೃಜನೆ, ರದ್ದತಿ ಅಥವಾ ಪುನಾರಚನೆ;

(vii) ಇತರ ವಿಶ್ವವಿದ್ಯಾಲಯಗಳು ಅಥವಾ ಉನ್ನತ ಕಲಿಕಾ ಸಂಸ್ಥೆಗಳ ಜೊತೆಯಲ್ಲಿ ಸಹಕರಿಸಬೇಕಾದ ರೀತಿ;

(viii) ಗೌರವ ಪದವಿಗಳ ನೀಡಿಕೆಯ ಕಾರ್ಯವಿಧಾನ;

(ix) ಉಚಿತ ಶಿಕ್ಷಣ (ಫ್ರಿಶಿಪ್) ಮತ್ತು ವಿದ್ಯಾರ್ಥಿವೇತನ ಮಂಜೂರಾತಿಗೆ ಸಂಬಂಧಿಸಿದ ಉಪಬಂಧಗಳು;

(x) ವಿವಿಧ ವ್ಯಾಸಂಗ ಕ್ರಮಗಳಲ್ಲಿನ ಸೀಟುಗಳ ಸಂಖ್ಯೆಗೆ ಸಂಬಂಧಿಸಿದ ಕಾರ್ಯನೀತಿಗಳು ಮತ್ತು ಅಂಥ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಕಾರ್ಯವಿಧಾನ;

(xi) ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಶುಲ್ಕಕ್ಕೆ ಸಂಬಂಧಿಸಿದ ಕಾರ್ಯನೀತಿ;

(xii) ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಉಚಿತ ಶಿಕ್ಷಣ, ಪದಕಗಳು ಹಾಗೂ ಬಹುಮಾನಗಳನ್ನು ಪ್ರಾರಂಭಿಸುವುದು;

(xiii) ಪ್ರಬಂಧಕ ಮಂಡಳಿಯು ನಿರ್ಧರಿಸಬಹುದಾದ ಅಥವಾ ಈ ಅಧಿನಿಯಮದ ಅಡಿಯಲ್ಲಿ ಪರಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬೇಕಾದ ಅಗತ್ಯತೆಯುಳ್ಳ ಯಾವುದೇ ಇತರ ವಿಷಯಗಳು.

34. **ಪರಿನಿಯಮಗಳ ರಚನೆ ವಿಧಾನ.–** (1) ವ್ಯವಸ್ಥಾಪನಾ ಮಂಡಳಿಯು ರಚಿಸಿದ ಮೊದಲ ಪರಿನಿಯಮಗಳನ್ನು ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ವ್ಯವಸ್ಥಾಪನಾ ಮಂಡಳಿಯು ಸಲ್ಲಿಸಿದ ಮೊದಲ ಪರಿನಿಯಮಗಳನ್ನು ಪ್ರಬಂಧಕ ಮಂಡಳಿಯು ಪರಿಗಣಿಸತಕ್ಕದ್ದು ಹಾಗೂ ತಾನು ಅವಶ್ಯವೆಂದು ಭಾವಿಸಬಹುದಾದ ಅಂಥ ಮಾರ್ಪಾಡುಗಳು, ಯಾವುದಾದರು ಇದ್ದಲ್ಲಿ, ಅವುಗಳೊಡನೆ ತನ್ನ ಅನುಮೋದನೆಯನ್ನು ನೀಡತಕ್ಕದ್ದು.

(3) ವಿಶ್ವವಿದ್ಯಾಲಯವು, ಪ್ರಬಂಧಕ ಮಂಡಳಿಯು ಅನುಮೋದಿಸಿದ ಮೊದಲ ಪರಿನಿಯಮಗಳನ್ನು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ಪ್ರಕಟಿಸತಕ್ಕದ್ದು ಮತ್ತು ತದನಂತರ ಮೊದಲ ಪರಿನಿಯಮಗಳ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

35. **ಪರಿನಿಯಮಗಳ ತಿದ್ದುಪಡಿಯ ಅಧಿಕಾರ.–** ಪ್ರಬಂಧಕ ಮಂಡಳಿಯು ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸಬಹುದು ಅಥವಾ ಪರಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ಅವನ್ನು ನಿರಸನಗೊಳಿಸಬಹುದು.

36. **ವಿನಿಯಮಗಳು.–** ಈ ಅಧಿನಿಯಮದ ಉಪಬಂದಗಳಿಗೆ ಒಳಪಟ್ಟು, ವಿನಿಯಮಗಳು ಈ ಮುಂದಿನ ವಿಷಯಗಳಿಗೆ ಉಪಬಂಧಗಳನ್ನು ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ವಿದ್ಯಾರ್ಥಿ ಪಟ್ಟಿಯಲ್ಲಿ ಅವರುಗಳ ದಾಖಲಾತಿ ಹಾಗೂ ಮುಂದುವರಿಕೆ;

(ii) ವಿಶ್ವವಿದ್ಯಾಲಯದ ಎಲ್ಲಾ ಪದವಿಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ನಿಗದಿಪಡಿಸತಕ್ಕ ವ್ಯಾಸಂಗ ಕ್ರಮಗಳು;

(iii) ಪದವಿಗಳ ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರದಾನ;

(iv) ಸಂಶೋಧನಾ ವೇತನಗಳು (ಫೆಲೋಶಿಪ್), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಪದಕಗಳು ಮತ್ತು ಬಹುಮಾನಗಳನ್ನು ನೀಡಲು ಷರತ್ತುಗಳು;

(v) ಪರೀಕ್ಷೆಗಳನ್ನು ನಡೆಸುವುದು ಹಾಗೂ ಪರೀಕ್ಷೆ ನಡೆಸುವ ಸಂಸ್ಥೆಗಳು, ಪರೀಕ್ಷಕರು, ಪರೀಕ್ಷಾ ಮೇಲ್ವಿಚಾರಕರು, ಟ್ಯಾಬುಲೇಟರ್‌ಗಳು ಮತ್ತು ಮಾಡರೇಟರ್‌ಗಳ ನೇಮಕಾತಿ ಷರತ್ತುಗಳು ಮತ್ತು ವಿಧಾನ ಹಾಗೂ ಅವರ ಕರ್ತವ್ಯಗಳು;

(vi) ವಿಶ್ವವಿದ್ಯಾಲಯದ ಪರೀಕ್ಷೆಗಳಿಗೆ, ಪದವಿಗಳಿಗೆ ಹಾಗೂ ಇತರ ಶೈಕ್ಷಣಿಕ ಪ್ರಶಸ್ತಿಗಳಿಗೆ ಪ್ರವೇಶಕ್ಕೆ ವಿಧಿಸತಕ್ಕ ಶುಲ್ಕ

(vii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನಲ್ಲಿ ವಿದ್ಯಾರ್ಥಿಗಳ ನಿವಾಸಕ್ಕಾಗಿ ಷರತ್ತುಗಳು;

(viii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಶಿಸ್ತು ಪಾಲನೆ;

(ix) ಈ ಅಧಿನಿಯಮದ ಅಡಿಯಲ್ಲಿನ ಪರಿನಿಯಮಗಳಲ್ಲಿ ಉಪಬಂಧ ಕಲ್ಪಿಸಬಹುದಾಂಥ ಇತರ ಎಲ್ಲಾ ವಿಷಯಗಳು.

**37. ವಿನಿಯಮಗಳ ರಚನೆ ವಿಧಾನ.–** ವಿನಿಯಮಗಳನ್ನು ಶೈಕ್ಷಣಿಕ ಪರಿಷತ್ತು ರಚಿಸತಕ್ಕದ್ದು ಹಾಗೂ ವ್ಯವಸ್ಥಾಪನಾ ಮಂಡಳಿಯು ಅನುಮೋದಿಸತಕ್ಕದ್ದು.

**38. ವಿನಿಯಮಗಳ ತಿದ್ದುಪಡಿಗೆ ಅಧಿಕಾರ.–** ವ್ಯವಸ್ಥಾಪನಾ ಮಂಡಳಿಯ ಅನುಮೋದನೆಯೊಡನೆ ಶೈಕ್ಷಣಿಕ ಪರಿಷತ್ತು ಹೊಸ ವಿನಿಯಮಗಳನ್ನು ಅಥವಾ ಹೆಚ್ಚುವರಿ ವಿನಿಯಮಗಳನ್ನು ರಚಿಸಬಹುದು ಅಥವಾ ವಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ನಿರಸನಗೊಳಿಸಬಹುದು.

**39. ಶುಲ್ಕ ನಿಗಧಿ.–** (1) 9ನೇ ಪ್ರಕರಣದ ಪರಂತುಕದ ಅಡಿಯಲ್ಲಿ ರಾಜ್ಯ ಸರ್ಕಾರದ ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡಲಾದ ಪ್ರವೇಶಗಳಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳಲ್ಲಿನ ಶೇಕಡಾ ನಲವತ್ತರಷ್ಟು ಪ್ರವೇಶಗಳ ಸಂಬಂಧದಲ್ಲಿ ಶುಲ್ಕವು ಸರ್ಕಾರ ಮತ್ತು ವಿಶ್ವವಿದ್ಯಾಲಯವು ಸಮ್ಮತಾಭಿಪ್ರಾಯದ ಒಪ್ಪಂದದ ಪ್ರಕಾರ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) ಅಧಿನಿಯಮ, 2006ರ (2006ರ ಕರ್ನಾಟಕ ಅಧಿನಿಯಮ 8) ಅನುಸಾರವಾಗಿ ಸರ್ಕಾರಿ ಸೀಟುಗಳಿಗಾಗಿ ರಾಜ್ಯ ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸಿದಂತೆ ಇರತಕ್ಕದ್ದು.

(2) ವಿಶ್ವವಿದ್ಯಾಲಯದ ಇತರ ಸೀಟುಗಳಿಗೆ ಸಂಬಂಧಿಸಿದಂತೆ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳು (ಪ್ರವೇಶ, ನಿಯಂತ್ರಣ ಮತ್ತು ಶುಲ್ಕ ನಿಗದಿ) ಅಧಿನಿಯಮ, 2006ರ (2006ರ ಕರ್ನಾಟಕ ಅಧಿನಿಯಮ 8) 6ನೇ ಪ್ರಕರಣದ ಉಪಬಂಧಗಳ ಅನುಸಾರವಾಗಿ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರ ಅಧ್ಯಕ್ಷತೆಯ ಅಡಿಯಲ್ಲಿ ರಚಿಸಲಾದ ಶುಲ್ಕ ನಿಯಂತ್ರಣ ಸಮಿತಿಯ ಮೂಲಕ ಶುಲ್ಕವನ್ನು ನಿಗದಿಪಡಿಸತಕ್ಕದ್ದು. ಈ ಪ್ರಕರಣದ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವನ್ನು ಖಾಸಗಿ ಅನುದಾನರಹಿತ ವೃತ್ತಿಪರ ಶಿಕ್ಷಣ ಸಂಸ್ಥೆ ಎಂದು ಭಾವಿಸತಕ್ಕದ್ದು.

## ಅಧ್ಯಾಯ – VI

### ಸಂಕೀರ್ಣ

**40. ನೌಕರರ ಸೇವಾ ಷರತ್ತುಗಳು.–** (1) ಪರಿನಿಯಮಗಳ ಮತ್ತು ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಥವಾ ನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳು, ಯಾವುದಾದರೂ ಇದ್ದಲ್ಲಿ, ಅವುಗಳಿಗೆ ಒಳಪಟ್ಟು ಪ್ರತಿಯೊಬ್ಬ ನೌಕರನು ಲಿಖಿತ ಕರಾರಿನ ಅಡಿಯಲ್ಲಿ ನೇಮಕಗೊಳ್ಳತಕ್ಕದ್ದು ಮತ್ತು ಅದನ್ನು ವಿಶ್ವವಿದ್ಯಾಲಯದಲ್ಲಿ ಇಟ್ಟುಕೊಳ್ಳತಕ್ಕದ್ದು ಹಾಗೂ ಅದರ ಪ್ರತಿಯನ್ನು ಸಂಬಂಧಪಟ್ಟ ನೌಕರನಿಗೆ ನೀಡತಕ್ಕದ್ದು.

(2) ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಕಾರ್ಯವಿಧಾನಗಳ ಮೂಲಕ ನಿಯಂತ್ರಿಸತಕ್ಕದ್ದು.

(3) ಕರಾರಿನಿಂದಾಗಿ ವಿಶ್ವವಿದ್ಯಾಲಯ ಮತ್ತು ನೌಕರನ ಮಧ್ಯದಲ್ಲಿ ಉದ್ಭವಿಸಬಹುದಾದ ಯಾವುದೇ ವಿವಾದವನ್ನು ಲಿಖಿತ ಕರಾರಿನಲ್ಲಿ ಉಪಬಂಧಿಸಿದ ವಿಧಾನದಲ್ಲಿ ಹಾಗೂ ಪರಿನಿಯಮಗಳ ಅನುಸಾರವಾಗಿ ಪರಿಹರಿಸತಕ್ಕದ್ದು.

**41. ಮೇಲ್ಮನವಿ ಹಕ್ಕು.**– ವಿಶ್ವವಿದ್ಯಾಲಯವು ತನ್ನ ನೌಕರರ ಅಥವಾ ವಿದ್ಯಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡ ಸಂದರ್ಭದಲ್ಲಿ, ಬಾಧಿತ ನೌಕರ ಅಥವಾ ವಿದ್ಯಾರ್ಥಿಗಳು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಮೇಲ್ಮನವಿ ಹಕ್ಕನ್ನು ಹೊಂದಿರತಕ್ಕದ್ದು.

**42. ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿ .**– ವಿಶ್ವವಿದ್ಯಾಲಯವು, ತನ್ನ ನೌಕರರ ಪ್ರಯೋಜನಕ್ಕಾಗಿ, ಪರಿನಿಯಮಗಳು ಮತ್ತು ಜಾರಿಯಲ್ಲಿರುವ ಕಾನೂನುಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿಯನ್ನು ರಚಿಸತಕ್ಕದ್ದು ಹಾಗೂ ಅಂಥ ವಿಮಾ ಯೋಜನೆಗಳನ್ನು ಒದಗಿಸತಕ್ಕದ್ದು.

**43. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು.**– ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಇತರ ಸಂಸ್ಥೆಯ ಸದಸ್ಯನಾಗಿ ಯಾವೊಬ್ಬ ವ್ಯಕ್ತಿಯು ಸೂಕ್ತವಾಗಿ ಆಯ್ಕೆಯಾಗಿದ್ದಾನೆಯೇ ಅಥವಾ ನೇಮಕಗೊಂಡಿದ್ದಾನೆಯೇ ಅಥವಾ ಅದಕ್ಕೆ ಅರ್ಹನಾಗಿದ್ದಾನೆಯೇ ಎಂಬ ಯಾವುದೇ ಪ್ರಶ್ನೆ ಉದ್ಭವಿಸಿದರೆ, ಆ ವಿಷಯವನ್ನು ತೀರ್ಮಾನಕ್ಕಾಗಿ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**44. ಸಮಿತಿಗಳ ರಚನೆ.**– 22ನೇ ಪ್ರಕರಣದಲ್ಲಿ ನಮೂದಿಸಿದ ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಅಧಿಕಾರವನ್ನು ಹೊಂದಿರುವ ಅಂಥ ಸದಸ್ಯರನ್ನು ಒಳಗೊಂಡ ಅಂಥ ಪ್ರಾಧಿಕಾರದ ಒಂದು ಸಮಿತಿಯನ್ನು ರಚಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**45. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು.**– ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಂಸ್ಥೆಯ ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ಪೈಕಿ ಯಾವುದೇ ಸ್ಥಾನವು ಆಕಸ್ಮಿಕವಾಗಿ ಖಾಲಿಯಾದರೆ, ಯಾರ ಸ್ಥಾನವು ಖಾಲಿಯಾಗಿ ತುಂಬಬೇಕಾಗಿ ಬಂದಿದೆಯೋ ಆ ಸದಸ್ಯನನ್ನು ಯಾವ ರೀತಿಯಲ್ಲಿ ಆರಿಸಲಾಗಿತ್ತೋ ಅದೇ ರೀತಿಯಲ್ಲಿ ಹೊಸ ಸದಸ್ಯನನ್ನು ಆರಿಸಿ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ಖಾಲಿ ಸ್ಥಾನವನ್ನು ಭರ್ತಿ ಮಾಡಿದ ವ್ಯಕ್ತಿಯು ಆತನು ಯಾವ ಸದಸ್ಯನ ಸ್ಥಾನದಲ್ಲಿ ಭರ್ತಿಯಾಗಿರುವನೋ ಆ ಸದಸ್ಯನು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯನಾಗಿ ಉಳಿಯುತ್ತಿದ್ದ ಬಾಕಿ ಅವಧಿಯವರೆಗೆ ಮಾತ್ರ ಸದಸ್ಯನಾಗಿರತಕ್ಕದ್ದು.

**46. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.**– ಈ ಅಧಿನಿಯಮ ಅಥವಾ ಪರಿನಿಯಮಗಳು ಅಥವಾ ನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ವಿಶ್ವವಿದ್ಯಾಲಯದ ಯಾವೊಬ್ಬ ಅಧಿಕಾರಿ ಅಥವಾ ಇತರ ನೌಕರರ ವಿರುದ್ಧ ಯಾವುದೇ ದಾವೆ ಅಥವಾ ಇತರ ಕಾನೂನು ವ್ಯವಹರಣೆಗಳನ್ನು ನಡೆಸಲು ಅವಕಾಶ ಇರತಕ್ಕದ್ದಲ್ಲ.

**47. ತಾತ್ಕಾಲಿಕ ಉಪಬಂಧಗಳು.**– ಈ ಅಧಿನಿಯಮ ಮತ್ತು ಪರಿನಿಯಮಗಳ ಯಾವುದೇ ಇತರ ಉಪಬಂಧಗಳಲ್ಲಿ ಏನೇ ಇದ್ದರೂ,–

(i) ಮೊದಲ ಕುಲಪತಿ ಮತ್ತು ಸಹಕುಲಪತಿ, ಯಾರಾದರೂ ಇದ್ದರೆ, ಅವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(ii) ಮೊದಲ ಕುಲಸಚಿವರು (ಆಡಳಿತ) ಮತ್ತು ಮೊದಲ ಕುಲಸಚಿವರು (ಮೌಲ್ಯಮಾಪನ) ಇವರನ್ನು ಮತ್ತು ಮೊದಲ ಹಣಕಾಸು ಅಧಿಕಾರಿಯವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು; ಮತ್ತು

(iii) ಮೊದಲ ವ್ಯವಸ್ಥಾಪನ ಮಂಡಳಿ, ಮೊದಲ ಹಣಕಾಸು ಸಮಿತಿ, ಮೊದಲ ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಹಾಗೂ ಮೊದಲ ಶೈಕ್ಷಣಿಕ ಪರಿಷತ್ತನ್ನು ಕುಲಾಧಿಪತಿಯವರು ರಚಿಸತಕ್ಕದ್ದು.

**48. ಶಾಶ್ವತ ಶಾಸನಬದ್ಧ ದತ್ತಿ ನಿಧಿ.**– (1) ವಿಶ್ವವಿದ್ಯಾಲಯವು, ಕನಿಷ್ಠ ಇಪ್ಪತ್ತೈದು ಕೋಟಿ ರೂಪಾಯಿಗಳನ್ನುಳ್ಳ ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು ಇದರ ಪೈಕಿ ಕನಿಷ್ಠ ಹದಿನೈದು ಕೋಟಿ ರೂಪಾಯಿಗಳು ನಗದು ರೂಪದಲ್ಲಿ ಮತ್ತು ಇನ್ನುಳಿದದ್ದು ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ಇರತಕ್ಕದ್ದು ಮತ್ತು ಇದನ್ನು ತಾನಾಗಿಯೆ ಹೆಚ್ಚಿಸಬಹುದಾಗಿದ್ದು ಆದರೆ ಕಡಿಮೆ ಮಾಡತಕ್ಕದ್ದಲ್ಲ:

ಪರಂತು, ಬೆಂಗಳೂರು ಅಥವಾ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊರಗಿರುವ ವಿಶ್ವವಿದ್ಯಾಲಯದ ಸಂದರ್ಭದಲ್ಲಿ ಕನಿಷ್ಠ ಹತ್ತು ಕೋಟಿ ರೂಪಾಯಿಗಳು ನಗದು ರೂಪದಲ್ಲಿರತಕ್ಕದ್ದು ಮತ್ತು ಉಳಿದ ಐದು ಕೋಟಿ ರೂಪಾಯಿಗಳು ಬ್ಯಾಂಕ್ ಗ್ಯಾರಂಟಿಯ ರೂಪದಲ್ಲಿರತಕ್ಕದ್ದು.

(2) ವಿಶ್ವವಿದ್ಯಾಲಯವು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಹಣವನ್ನು ಹೂಡಲು ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯವು ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಗೆ ವರ್ಗಾವಣೆ ಮಾಡಬಹುದು. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನೂ ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(4) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಿದ ವರಮಾನದ ಶೇಕಡಾ ಎಪ್ಪತ್ತೈದರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತೈದರಷ್ಟನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಯಲ್ಲಿ ಪುನ: ತೊಡಗಿಸತಕ್ಕದ್ದು.

**49. ವಿಶ್ವವಿದ್ಯಾಲಯದ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ನಿಧಿಗಳನ್ನು ಒಳಗೊಂಡ ವಿಶ್ವವಿದ್ಯಾಲಯದ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದು ಕಾಲಕಾಲಕ್ಕೆ ಸ್ವೀಕರಿಸಬಹುದಾದ ದೇಣಿಗೆಗಳು ಮತ್ತು ಇತರ ನಿಧಿಗಳನ್ನು ಒಳಗೊಂಡಿರತಕ್ಕದ್ದು.

(2) ವಿಶ್ವವಿದ್ಯಾಲಯವು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ವಿಶ್ವವಿದ್ಯಾಲಯದ ದತ್ತಿನಿಧಿಯನ್ನು ಹೂಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯ ದತ್ತಿ ನಿಧಿಯು, ವಿಶ್ವವಿದ್ಯಾಲಯವು ತನ್ನ ಸಾಮಾಜಿಕ ಧ್ಯೇಯೋದ್ದೇಶಗಳನ್ನು ನೆರವೇರಿಸುವ ಸಂದರ್ಭದಲ್ಲಿ ಮತ್ತು/ಅಥವಾ ಮುಂಗಾಣದ ಸನ್ನಿವೇಶದಲ್ಲಿ ಉದ್ಭವಿಸಬಹುದಾದ ಹಣಕಾಸು ಸವಾಲುಗಳಿಂದ ತನ್ನನ್ನು ರಕ್ಷಿಸಿಕೊಳ್ಳುವುದಕ್ಕಾಗಿ, ಸ್ವಇಚ್ಛೆಯಿಂದ ನಿರ್ವಹಿಸಿಕೊಂಡು ಬರಲು ಮತ್ತು ಜವಾಬ್ದಾರಿಯಿಂದ ಹಣ ಹೂಡಿಕೆ ಮಾಡಲು ಇಚ್ಛೆಯುಳ್ಳವರಾಗಿ ಸ್ವಯಂ ವಿಧಿಸಿಕೊಂಡ ನಿಧಿಯಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಗೆ ವರ್ಗಾಯಿಸಬಹುದು. ವಿಶ್ವವಿದ್ಯಾಲಯದ ಸಮಾಪಣೆಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನು ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(5) ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಬರುವ ವರಮಾನದ ಶೇಕಡಾ ಎಂಭತ್ತರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸದ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತರಷ್ಟನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**50. ಸಾಮಾನ್ಯ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಸಾಮಾನ್ಯ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯವು ವಿಧಿಸಬಹುದಾದ ಎಲ್ಲಾ ಶುಲ್ಕಗಳು;

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವುದೇ ಇತರ ಮೂಲದಿಂದ ಸ್ವೀಕರಿಸಲಾದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ದೇಣಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು;

(2) ಸಾಮಾನ್ಯ ನಿಧಿಗೆ ಜಮಾ ಮಾಡುವ ನಿಧಿಗಳನ್ನು ವಿಶ್ವವಿದ್ಯಾಲಯದ ಎಲ್ಲಾ ಆವರ್ತಕ ವೆಚ್ಚಗಳನ್ನು ಭರಿಸಲು ಉಪಯೋಗಿಸಿಕೊಳ್ಳತಕ್ಕದ್ದು.

**51. ಅಭಿವೃದ್ಧಿ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಅಭಿವೃದ್ಧಿ ನಿಧಿಯನ್ನು ಸಹ ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ವಿದ್ಯಾರ್ಥಿಗಳಿಂದ ವಿಧಿಸಬಹುದಾದ ಅಭಿವೃದ್ಧಿ ಶುಲ್ಕಗಳು;

(ii) ವಿಶ್ವವಿದ್ಯಾಲಯದ ಅಭಿವೃದ್ಧಿಯ ಉದ್ದೇಶಗಳಿಗಾಗಿ ಯಾವುದೇ ಇತರ ಮೂಲಗಳಿಂದ ಸ್ವೀಕರಿಸಿದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ವಂತಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು; ಮತ್ತು

(v) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಲಾದ ಎಲ್ಲಾ ವರಮಾನಗಳು.

(2) ಅಭಿವೃದ್ಧಿ ನಿಧಿಗೆ ಕಾಲಕಾಲಕ್ಕೆ ಜಮಾ ಮಾಡಿದ ನಿಧಿಯನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಪಯೋಗಿಸಕೊಳ್ಳತಕ್ಕದ್ದು.

**52. ನಿಧಿಗಳ ನಿರ್ವಹಣೆ.**– 48, 49, 50 ಮತ್ತು 51ನೇ ಪ್ರಕರಣಗಳಡಿಯಲ್ಲಿ ಸ್ಥಾಪಿಸಲಾದ ನಿಧಿಗಳನ್ನು ಪ್ರಬಂಧಕ ಮಂಡಳಿಯ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ನಿಯಂತ್ರಿಸತಕ್ಕದ್ದು ಹಾಗೂ ನಿರ್ವಹಿಸತಕ್ಕದ್ದು.

**53. ವಾರ್ಷಿಕ ವರದಿ.**– (1) ವಿಶ್ವವಿದ್ಯಾಲಯದ ವಾರ್ಷಿಕ ವರದಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ಅದರ ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಪ್ರಬಂಧಕ ಮಂಡಳಿಯು ವಾರ್ಷಿಕ ವರದಿಯನ್ನು ತನ್ನ ಸಭೆಯಲ್ಲಿ ಪರಿಗಣಿಸತಕ್ಕದ್ದು ಹಾಗೂ ಅದನ್ನು ಮಾರ್ಪಾಡುಗಳೊಡನೆ ಅಥವಾ ಮಾರ್ಪಾಡುಗಳಿಲ್ಲದೆ ಅನುಮೋದಿಸಬಹುದು.

(3) ಪ್ರಬಂಧಕ ಮಂಡಳಿಯು ಸೂಕ್ತವಾಗಿ ಅನುಮೋದಿಸಿದ ವಾರ್ಷಿಕ ವರದಿಯ ಒಂದು ಪ್ರತಿಯನ್ನು ಪ್ರತಿವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ಡಿಸೆಂಬರ್ 31ಕ್ಕೆ ಮೊದಲು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**54. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.**– (1) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕ ಪತ್ರ ಮತ್ತು ಜಮಾ ಖರ್ಚು ಪಟ್ಟಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯಕ್ಕೆ ಎಲ್ಲಾ ಮೂಲಗಳಿಂದ ಪ್ರಾಪ್ತವಾಗುವ ಅಥವಾ ಸ್ವೀಕರಿಸಲಾಗುವ ಎಲ್ಲಾ ನಿಧಿಗಳು ಹಾಗೂ ವಿತರಿಸಿದ ಅಥವಾ ಸಂದಾಯ ಮಾಡಿದ ಎಲ್ಲಾ ಮೊಬಲಗುಗಳನ್ನು ವಿಶ್ವವಿದ್ಯಾಲಯವು ನಿರ್ವಹಿಸುವ ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕಪತ್ರಗಳನ್ನು ಪ್ರತಿ ವರ್ಷವೂ ಭಾರತದ ಚಾರ್ಟೆಡ್ ಅಕೌಂಟೆಂಟ್‌ಗಳ ಸಂಸ್ಥೆಯ ಸದಸ್ಯರಾಗಿರುವ ಒಬ್ಬ ಲೆಕ್ಕಪರಿಶೋಧಕರಿಂದ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಲೆಕ್ಕಪರಿಶೋಧನಾ ವರದಿಯೊಡನೆ, ಪ್ರತಿ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ನವೆಂಬರ್ 30ಕ್ಕೆ ಮೊದಲು ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(4) ವಾರ್ಷಿಕ ಲೆಕ್ಕಪತ್ರಗಳು, ಜಮಾಖರ್ಚು ಪಟ್ಟಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಪ್ರಬಂಧಕ ಮಂಡಳಿಯು ತನ್ನ ಸಭೆಯಲ್ಲಿ ಪರ್ಯಾಲೋಚಿಸತಕ್ಕದ್ದು ಮತ್ತು ಪ್ರಬಂಧಕ ಮಂಡಳಿಯು ಅದನ್ನು ತನ್ನ ಅಭಿಪ್ರಾಯಗಳೊಡನೆ ಸಂದರ್ಶಕರಿಗೆ ಹಾಗೂ ಸರ್ಕಾರಕ್ಕೆ ಪ್ರತಿ ವರ್ಷದ ಡಿಸೆಂಬರ್ 31ಕ್ಕೆ ಮೊದಲು ಕಳುಹಿಸತಕ್ಕದ್ದು.

(5) ಲೆಕ್ಕಪರಿಶೋಧಕರ ವರದಿಯಲ್ಲಿ ಯಾವುದೇ ಮುಖ್ಯ ಬದಲಾವಣೆ ಇದ್ದ ಸಂದರ್ಭದಲ್ಲಿ, ಅವುಗಳನ್ನು ಸರಿಪಡಿಸಲು, ರಾಜ್ಯ ಸರ್ಕಾರವು ವಿಶ್ವವಿದ್ಯಾಲಯಕ್ಕೆ ನಿರ್ದೇಶನಗಳನ್ನು ಹೊರಡಿಬಹುದು ಮತ್ತು ಅಂಥ ನಿರ್ದೇಶನಗಳು ವಿಶ್ವವಿದ್ಯಾಲಯದ ಮೇಲೆ ಬಂಧನಕಾರಿಯಾಗಿರತಕ್ಕದ್ದು.

**55. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ.**– ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಮಿತಿಯ ಯಾವುದೇ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ ಅಥವಾ ಗೊತ್ತುವಳಿಯು ಅಥವಾ ವಿಶ್ವವಿದ್ಯಾಲಯದ ಸ್ವಾಧೀನದಲ್ಲಿರುವ ಇತರ ದಾಖಲೆಗಳು ಅಥವಾ ವಿಶ್ವವಿದ್ಯಾಲಯವು ಯುಕ್ತವಾಗಿ ನಿರ್ವಹಿಸುವ ಯಾವುದೇ ರಿಜಿಸ್ಟರ್‌ನಲ್ಲಿಯ ಯಾವುದೇ ನಮೂದುಗಳ ಪ್ರತಿಯನ್ನು, ಅದರ ಮೇಲೆ ಕುಲಸಚಿವರು ಪ್ರಮಾಣೀಕರಿಸಿದ್ದರೆ, ಅದನ್ನು ಅಂಥ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ, ಗೊತ್ತುವಳಿ ಅಥವಾ ದಾಖಲೆ ಅಥವಾ ರಿಜಿಸ್ಟರ್‌ನಲ್ಲಿ ಇರುವ ನಮೂದನ್ನು ಮೇಲ್ನೋಟದ ಸಾಕ್ಷ್ಯವೆಂಬುದಾಗಿ ಸ್ವೀಕರಿಸತಕ್ಕದ್ದು ಮತ್ತು ವಿಷಯಗಳ ಸಾಕ್ಷಿಯಾಗಿ ಅಂಗೀಕರಿಸತಕ್ಕದ್ದು ಹಾಗೂ ಮೂಲ ದಾಖಲೆಗಳನ್ನೇ ಸಲ್ಲಿಸಿದ್ದರೆ ಅದನ್ನು, ದಾಖಲಿಸಿರುವ ವಿಷಯಗಳು ಮತ್ತು ವಹಿವಾಟುಗಳ ಸಾಕ್ಷ್ಯವಾಗಿ ಅಂಗೀಕರಿಸಲಾಗುತ್ತಿತ್ತೋ, ಅದೇ ರೀತಿಯಲ್ಲಿ ಇವನ್ನೂ ಸಾಕ್ಷ್ಯವಾಗಿ ಅಂಗೀಕರಿಸತಕ್ಕದ್ದು.

**56. ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ.**– ರಾಜ್ಯಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಥವಾ ಅದರಲ್ಲಿ ಇರುವ ಯಾವುವೇ ಉಪಬಂಧಗಳನ್ನು ಅಥವಾ ಅದರಡಿಯಲ್ಲಿ ರಚಿಸಿದ ಯಾವುವೇ ನಿಯಮಗಳು ಅಥವಾ ಆದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿರ್ದೇಶನ ನೀಡುವುದು ಅವಶ್ಯವೆಂದು ಅಥವಾ ಉಚಿತವೆಂದು ಅಭಿಪ್ರಾಯಪಟ್ಟಲ್ಲಿ ಅದು ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ ಅಥವಾ ಸಂದರ್ಭಾನುಸಾರವಾಗಿ ವ್ಯವಸ್ಥಾಪನಾ ಮಂಡಳಿಯು ಅಂಥ ಪ್ರತಿಯೊಂದು ನಿರ್ದೇಶನವನ್ನು ಪಾಲಿಸತಕ್ಕದ್ದು.

57. ದಂಡಗಳು.– (1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿತವಾದ ನಿಯಮಗಳು ಉಪಬಂಧಗಳನ್ನು ಅಥವಾ ಯಾವುದೇ ಪರೀಕ್ಷಾ ವಿಷಯಗಳನ್ನು ಅಥವಾ ಪದವಿಗಳನ್ನು ನೀಡುವುದಕ್ಕೆ ಅಥವಾ

ಅಂಕಪಟ್ಟಿಗಳನ್ನು ನೀಡುವುದಕ್ಕೆ ಸಂಬಂಧಪಟ್ಟ ವಿಷಯಗಳಲ್ಲಿ ಉಲ್ಲಂಘನೆಗಳನ್ನು ಮಾಡುವ ಯಾವೊಬ್ಬ ವ್ಯಕ್ತಿಯು, ಅಪರಾಧ ನಿರ್ಣಯವಾದ ಮೇಲೆ. ಐವತ್ತು ಸಾವಿರ ರೂಪಾಯಿಗಳಿಗೆ ಕಡಿಮೆಯಲ್ಲದ ಆದರೆ ಹತ್ತು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಆರು ತಿಂಗಳ ಅವಧಿಗಿಂತ ಕಡಿಮೆಯಲ್ಲದ ಆದರೆ ಎರಡು ವರ್ಷಗಳ ಅವಧಿಯವರೆಗೆ ವಿಸ್ತರಿಸಬಹುದಾದ ಕಾರಾವಾಸದಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು:

ಪರಂತು, ಅಪರಾಧವನ್ನು ಎಸಗುವಲ್ಲಿ ವಿಶ್ವವಿದ್ಯಾಲಯವೂ ಸಹ ಒಳಗೊಂಡಿರುವಲ್ಲಿ, ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಈ ಅಧಿನಿಯಮದ ಅಡಿಯಲ್ಲಿ ಮಂಜೂರು ಮಾಡಲಾದ ಅನುಮತಿ ಪತ್ರವನ್ನು ಹಿಂತೆಗೆದುಕೊಳ್ಳತಕ್ಕದ್ದು.

(2) ಈ ಪ್ರಕರಣದ ಅಡಿಯಲ್ಲಿಯ ದಂಡವನ್ನು ಇತರ ಯಾವುದೇ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಲಾದ ದಂಡಕ್ಕೆ ಬಾಧಕವಾಗದಂತೆ ವಿಧಿಸಬಹುದು.

**58. ಪ್ರವೇಶಿಸುವ ಮತ್ತು ಪರಿಶೀಲಿಸುವ ಅಧಿಕಾರ.**– ಈ ಉದ್ದೇಶಕ್ಕಾಗಿ, ರಾಜ್ಯಸರ್ಕಾರದಿಂದ ಪ್ರಾಧಿಕೃತಗೊಂಡ 'ಎ' ಸಮೂಹದ ಅಧಿಕಾರಿ ದರ್ಜೆಗಿಂತ ಕಡಿಮೆಇಲ್ಲದ ದರ್ಜೆಯ ಯಾವೊಬ್ಬ ಅಧಿಕಾರಿಯು, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಶನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ 37) ಅಡಿಯಲ್ಲಿ ನಿರ್ದಿಷ್ಟಪಡಿಸಿರಬಹುದಾದ ಅಂಥ ಷರತ್ತುಗಳಿಗೆ ಒಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ, ಆ ಅಧಿನಿಯಮದ 9ನೇ ಪ್ರಕರಣದ ಅಡಿಯಲ್ಲಿ ಉಪಬಂಧಿಸಲಾದಂತಹವೇ ಅಧಿಕಾರಗಳನ್ನು ಚಲಾಯಿಸಲು ಮತ್ತು ಪ್ರಕಾರ್ಯಗಳನ್ನು ನೆರವೇರಿಸಲು ಅಧಿಕೃತನಾದ ಅಧಿಕಾರಿ ಎಂಬುದಾಗಿ ಭಾವಿಸತಕ್ಕದ್ದು.

**59. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ನಿರ್ದೇಶನವನ್ನು ನೀಡುವ ಅಧಿಕಾರ.**– (1) ವಿಶ್ವವಿದ್ಯಾಲಯವು ತನ್ನ ರಚನೆ ಅಥವಾ ನಿಗಮನವನ್ನು ನಿಯಂತ್ರಿಸುವ ಕಾನೂನಿಗೆ ಅನುಸಾರವಾಗಿ ತನ್ನ ಸಮಾಪನವನ್ನು ಉದ್ದೇಶಿಸಿದ್ದಲ್ಲಿ, ಅದು ಕನಿಷ್ಠ ಆರು ತಿಂಗಳ ಲಿಖಿತ ಪೂರ್ವ ಸೂಚನೆಯನ್ನು (ನೋಟಿಸು) ಸರ್ಕಾರಕ್ಕೆ ನೀಡತಕ್ಕದ್ದು.

(2) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಈ ಕೆಳಗಿನವುಗಳ ಬಗ್ಗೆ, ಎಂದರೆ:–

(i) ಪದವಿಯನ್ನು ನೀಡುವುದಕ್ಕಾಗಿ ಬೋಧನೆಯ ಗುಣಮಟ್ಟ;

(ii) ಶಿಕ್ಷಣದ ಗುಣಮಟ್ಟ;

(iii) ಉನ್ನತ ಶಿಕ್ಷಣದ ವ್ಯಾಪಾರೀಕರಣವನ್ನು ತಡೆಗಟ್ಟುವುದು;

(iv) ಅಧಿನಿಯಮದ ಉಪಬಂಧಗಳ ಉಲ್ಲಂಘನೆಯ ಬಗ್ಗೆ, ಯಾವುದಾದರೂ ಇದ್ದಲ್ಲಿ,

– ಇವುಗಳ ಬಗ್ಗೆ ನಿಯತಕಾಲಿಕ ಪರಿವೀಕ್ಷಣೆಯನ್ನು ನಡೆಸತಕ್ಕದ್ದು ಮತ್ತು ಸರ್ಕಾರಕ್ಕೆ ವರದಿಯನ್ನು ಕಳುಹಿಸತಕ್ಕದ್ದು.

(3) ದುರ್ವ್ಯವಹರಣೆ, ದುರಾಡಳಿತ ಮತ್ತು ಅಶಿಸ್ತು ಆಗಿದೆ ಎಂಬುದನ್ನು ಗುರುತಿಸಿದರೆ, ಸರ್ಕಾರವು, ವಿಶ್ವವಿದ್ಯಾಲಯದ ಆಡಳಿತವರ್ಗದವರಿಗೆ ಆಡಳಿತವನ್ನು ಸರಿಪಡಿಸಬೇಕೆಂದು ನಿರ್ದೇಶನಗಳನ್ನು ನೀಡತಕ್ಕದ್ದು. ನಿಯಮಿಸಬಹುದಾದ ಅಂಥ ಅವಧಿಯೊಳಗೆ ಆ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುವ ಹಕ್ಕು ಸರ್ಕಾರದಲ್ಲಿ ನಿಹಿತವಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ವಿಧಾನವು, ಸರ್ಕಾರವು ಈ ಸಂಬಂಧದಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು:

ಪರಂತು, ವಿಶ್ವವಿದ್ಯಾಲಯವು ತನ್ನ ಕಾರಣಗಳನ್ನು ಹೇಳಿಕೊಳ್ಳಲು ಸಮಂಜಸ ಅವಕಾಶಗಳನ್ನು ನೀಡಿದ ಹೊರತು ಅಂಥ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

(5) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೋಟಿಸನ್ನು ಸ್ವೀಕರಿಸಿದ ಮೇಲೆ, ಸರ್ಕಾರವು ಸಂಬಂಧಿಸಿದ ನಿಯಂತ್ರಣಾ ಪ್ರಾಧಿಕಾರದೊಡನೆ ಸಮಾಲೋಚಿಸಿ, ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ಅಥವಾ ವ್ಯಾಸಂಗ ಕ್ರಮವನ್ನು ಪರಿಸಮಾಪನಗೊಳಿಸಲು ಉದ್ದೇಶಿಸಿದ ದಿನಾಂಕದಿಂದ, ವಿಶ್ವವಿದ್ಯಾಲಯದಲ್ಲಿ ನಿಯತ ವ್ಯಾಸಂಗ ಕ್ರಮಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕೊನೆಯ ತಂಡ (ಬ್ಯಾಚ್) ತನ್ನ ವ್ಯಾಸಂಗ ಕ್ರಮವನ್ನು ಮುಗಿಸುವವರೆಗೆ ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು.

**60. ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು.**– (1) 58ನೇ ಪ್ರಕರಣದ (5)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ಅದರ ಆಡಳಿತಾತ್ಮಕ ವೆಚ್ಚಗಳನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ನೇಮಿಸಬಹುದಾದ ಅಂಥ ವಿಧಾನದಲ್ಲಿ ಭರಿಸತಕ್ಕದ್ದು.

(2) ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ವಿಶ್ವವಿದ್ಯಾಲಯದ ವೆಚ್ಚವನ್ನು ಭರಿಸಲು , 49, 50 ಮತ್ತು 51ನೇ ಪ್ರಕರಣಗಳ ಅಡಿಯಲ್ಲಿ ಉಲ್ಲೇಖಿಸಲಾದ ನಿಧಿಯು ಸಾಕಷ್ಟು ಇಲ್ಲದಿದ್ದಲ್ಲಿ, ಅಂಥ ವೆಚ್ಚವನ್ನು ಸರ್ಕಾರವು, ವಿಶ್ವವಿದ್ಯಾಲಯದ ಸ್ವತ್ತುಗಳು ಮತ್ತು ಆಸ್ತಿಗಳನ್ನು ವಿಲೇ ಮಾಡುವ ಮೂಲಕ ಭರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಸಮಾಪನೆಯು ದುರ್ವ್ಯವಹರಣೆ ಅಥವಾ ದುರಾಡಳಿತದ ಕಾರಣಗಳಿಗಾಗಿ ಆಗಿದ್ದರೆ, ಸರ್ಕಾರವು ಅಂಥ ದುರ್ವ್ಯವಹಾರಕ್ಕೆ ಅಥವಾ ದುರಾಡಳಿತಕ್ಕೆ ಹೊಣೆಯಾಗಿರುವ ವ್ಯಕ್ತಿಗಳನ್ನು ಗುರುತಿಸುವ ಮತ್ತು ಅವರ ಮೇಲೆ ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ದಂಡನೆಯನ್ನು ವಿಧಿಸಲು ಸ್ವತಂತ್ರವಾಗಿರತಕ್ಕದ್ದು.

**61. ತೊಂದರೆಗಳ ನಿವಾರಣೆಗೆ ಅಧಿಕಾರ.–** (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಅಥವಾ ಆದೇಶದ ಮೂಲಕ ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಐದು ವರ್ಷಗಳು ಮುಕ್ತಾಯವಾದ ತರುವಾಯ ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಅಧಿಸೂಚನೆ ಅಥವಾ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

**62. ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ.–** (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಉಭಯ ಸದನಗಳು ಒಪ್ಪಿದರೆ ತದನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ದತಿಯು ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವನ್ನು ಉಂಟುಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಕೆ.ದ್ವಾರಕನಾಥ್ ಬಾಬು**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪ್ರಿ7) ಪ್ರತಿಗಳು: 400

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ - IV-A | ಬೆಂಗಳೂರು, ಗುರುವಾರ, ಫೆಬ್ರವರಿ ೭, ೨೦೧೩ (ಮಾಘ ೧೮, ಶಕ ವರ್ಷ ೧೯೩೪) | ನಂ. ೧೫೫ |
|---|---|---|
| Part - IV-A | Bangalore, Thursday, February 7, 2013 (Magha 18, Shaka Varsha 1934) | No. 155 |

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಂವ್ಯಶಾಇ 33 ಶಾಸನ 2012, ಬೆಂಗಳೂರು, ದಿನಾಂಕ: 07.02.2013

ವೆಲ್ಲೂರು ತಾಂತ್ರಿಕ ಸಂಸ್ಥೆ, ಬೆಂಗಳೂರು ವಿಧೇಯಕ, 2012 – ಇದಕ್ಕೆ 2013ರ ಫೆಬ್ರವರಿ ತಿಂಗಳ ಐದನೇ ದಿನಾಂಕದಂದು ಘನತೆವೆತ್ತ ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2013ರ ಕರ್ನಾಟಕ ಅಧಿನಿಯಮ ಸಂಖ್ಯೆ: 14 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2013 ರ ಕರ್ನಾಟಕ ಅಧಿನಿಯಮ ಸಂಖ್ಯೆ: 14**

(2013ರ ಫೆಬ್ರವರಿ ಮಾಹೆಯ ಏಳನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ವೆಲ್ಲೂರು ತಾಂತ್ರಿಕ ಸಂಸ್ಥೆ, ಬೆಂಗಳೂರು ಅಧಿನಿಯಮ, 2012**

(2013ರ ಫೆಬ್ರವರಿ ಮಾಹೆಯ ಐದನೇ ದಿನಾಂಕದಂದು ರಾಜ್ಯಪಾಲರ ಅನುಮತಿಯನ್ನು ಪಡೆಯಲಾಗಿದೆ)

ಕಲೆ, ವಿಜ್ಞಾನ, ವಾಣಿಜ್ಯ, ಕಾನೂನು, ಇಂಜಿನಿಯರಿಂಗ್, ಮಾನವಿಕ ವಿಷಯಗಳು, ವೈದ್ಯಕೀಯ, ಔಷಧ ವಿಜ್ಞಾನ, ತತ್ಸಂಬಂಧಿತ ಆರೋಗ್ಯ ವಿಜ್ಞಾನಗಳು, ವ್ಯವಹಾರ ಆಡಳಿತ ನಿರ್ವಹಣೆ, ಕೃಷಿ, ಶಿಕ್ಷಣ ಮತ್ತು ತತ್ಸಂಬಂಧಿ ವಲಯಗಳಲ್ಲಿ ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಉತ್ತೇಜಿಸಲು ಮತ್ತು ಕೈಗೊಳ್ಳಲು ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದಕ್ಕಾಗಿ ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕಲೆ, ವಿಜ್ಞಾನ, ವಾಣಿಜ್ಯ, ಕಾನೂನು, ಇಂಜಿನಿಯರಿಂಗ್, ಮಾನವಿಕ ವಿಷಯಗಳು, ವೈದ್ಯಕೀಯ, ಔಷಧ ವಿಜ್ಞಾನ, ತತ್ಸಂಬಂಧಿತ ಆರೋಗ್ಯ ವಿಜ್ಞಾನಗಳು, ವ್ಯವಹಾರ ಆಡಳಿತ ನಿರ್ವಹಣೆ, ಕೃಷಿ, ಶಿಕ್ಷಣ ಮತ್ತು ತತ್ಸಂಬಂಧಿ ವಲಯಗಳಲ್ಲಿ ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಉತ್ತೇಜಿಸಲು ಮತ್ತು ಕೈಗೊಳ್ಳಲು ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೂರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:–

## ಅಧ್ಯಾಯ – I

## ಪ್ರಾರಂಭಿಕ

**1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.–** (1) ಈ ಅಧಿನಿಯಮವನ್ನು ವೆಲ್ಲೂರು ತಾಂತ್ರಿಕ ಸಂಸ್ಥೆ, ಬೆಂಗಳೂರು ಅಧಿನಿಯಮ, 2012 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. ಪರಿಭಾಷೆಗಳು.–** ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,–

(ಎ) "ಶೈಕ್ಷಣಿಕ ಪರಿಷತ್ತು (ಅಕೆಡೆಮಿಕ್ ಕೌನ್ಸಿಲ್)" ಎಂದರೆ, 25ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿಸಲಾದ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು;

(ಬಿ) "ಕಾರ್ಯಸೂಚಿ ವಿಷಯಗಳು", ಎಂದರೆ, ಪರಿನಿಯಮಗಳಲ್ಲಿ ಹೆಸರಿಸಬಹುದಾದ ಮತ್ತು ಒಂದು ಸಭೆಯಲ್ಲಿ ಆ ವಿಷಯಗಳನ್ನು ಮತ್ತು ಕಲಾಪಗಳನ್ನು ಅನುಮೋದಿಸಬಹುದೆಂದು ತಮ್ಮ ಸಮ್ಮತಿ ಸೂಚಿಸಿ ಕುಲಾಧಿಪತಿಯವರು ಮುಂಚಿತವಾಗಿಯೇ ಲಿಖಿತ ಅನುಮೋದನೆಯನ್ನು ಕೊಟ್ಟಿದ್ದಾಗ ಮಾತ್ರವೇ ಸಂದರ್ಭಾನುಸಾರ ಪ್ರಬಂಧಕರ ಮಂಡಳಿ ಅಥವಾ ವ್ಯವಸ್ಥಾಪನಾ ಮಂಡಳಿ ಅಥವಾ ಯಾವುದೇ ಸಮಿತಿಯವರು ಕಾರ್ಯಸೂಚಿಯಲ್ಲಿ ಸೇರಿಸಬಹುದಾದ ಅಥವಾ ಸಭೆಯಲ್ಲಿ ಚರ್ಚೆಗೆ ತೆಗೆದುಕೊಂಡು ನಿರ್ಣಯವನ್ನು ಕೊಡಬಹುದಾದ ಎಲ್ಲಾ ವಿಷಯಗಳು ಮತ್ತು ಕಲಾಪಗಳು;

(ಸಿ) "ಪ್ರಬಂಧಕರ ಮಂಡಳಿ" ಎಂದರೆ, 23ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಪ್ರಬಂಧಕರ ಮಂಡಳಿ;

(ಡಿ) "ವ್ಯವಸ್ಥಾಪನಾ ಮಂಡಳಿ" ಎಂದರೆ, 24ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಆಡಳಿತ ಮಂಡಳಿ;

(ಇ) "ಕುಲಾಧಿಪತಿ", "ಕುಲಪತಿ", "ಸಹಕುಲಪತಿ" ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ ಮತ್ತು ಸಹಕುಲಪತಿ;

(ಎಫ್) "ಕ್ಯಾಂಪಸ್" ಎಂದರೆ, ಅದು ಎಲ್ಲಾದರೂ ಇರಲಿ ವಿಶ್ವವಿದ್ಯಾಲಯವು ಸ್ಥಾಪಿಸಿದ, ನಿರ್ವಹಿಸುವ ಒಂದು ಕ್ಯಾಂಪಸ್;

(ಜಿ) "ಸಮಿತಿಗಳು" ಎಂದರೆ, ಈ ಅಧಿನಿಯಮದಡಿಯಲ್ಲಿ ರೂಪಿಸಲಾದ ಸಮಿತಿಗಳು ಅಥವಾ ಸಂದರ್ಭಾನುಸಾರವಾಗಿ ವಿಶ್ವವಿದ್ಯಾಲಯದ ವಿವಿಧ ಕಾರ್ಯಕರ್ತರು ರಚಿಸಿರುವ ಸಮಿತಿಗಳು ಮತ್ತು ಅದರಲ್ಲಿ ನಾಮನಿರ್ದೇಶನ ಸಮಿತಿ, ಹಣಕಾಸು ಸಮಿತಿ, ದೂರಶಿಕ್ಷಣ ಸಮಿತಿ ಮತ್ತು ಅಂಥ ಇತರ ಸಮಿತಿಗಳು ಒಳಗೊಳ್ಳುತ್ತವೆ;

(ಎಚ್) "ಘಟಕ ಕಾಲೇಜು" ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುತ್ತಿರುವ ಒಂದು ಕಾಲೇಜು ಅಥವಾ ಸಂಸ್ಥೆ;

(ಐ) "ಹಣಕಾಸು ಸಮಿತಿ" ಎಂದರೆ, 27ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಹಣಕಾಸು ಸಮಿತಿ;

(ಜೆ) "ಸರ್ಕಾರ" ಎಂದರೆ, ಕರ್ನಾಟಕ ಸರ್ಕಾರ;

(ಕೆ) "ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳು" ಎಂದರೆ, ವಿಶ್ವವಿದ್ಯಾಲಯ ಅನುದಾನ ಆಯೋಗ, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು, ಭಾರತೀಯ ವೈದ್ಯಕೀಯ ಪರಿಷತ್ತು, ಭಾರತೀಯ ಔಷಧ ವಿಜ್ಞಾನ ಪರಿಷತ್ತು, ಭಾರತೀಯ ಕೃಷಿ ಸಂಶೋಧನಾ ಪರಿಷತ್ತು, ರಾಷ್ಟ್ರೀಯ ಮೌಲ್ಯಮಾಪನ ಮತ್ತು ಅಧಿಮಾನ್ಯತಾ ಪರಿಷತ್ತು, ರಾಷ್ಟ್ರೀಯ ಬೋಧಕ ಶಿಕ್ಷಣ ಪರಿಷತ್ತು, ದೂರಶಿಕ್ಷಣ ಪರಿಷತ್ತು, ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಪರಿಷತ್ತು ಮುಂತಾದ, ಉನ್ನತ ಶಿಕ್ಷಣದಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುವಂತೆ ನೋಡಿಕೊಳ್ಳುವುದಕ್ಕಾಗಿ ಗುಣಮಟ್ಟಗಳು ಮತ್ತು ಷರತ್ತುಗಳನ್ನು ವಿಧಿಸುವುದಕ್ಕಾಗಿ, ಕೇಂದ್ರ ಸರ್ಕಾರವು ಸ್ಥಾಪಿಸಿರುವ ಒಂದು ಸಂಸ್ಥೆ ಮತ್ತು ಇದರಲ್ಲಿ ಸರ್ಕಾರವೂ ಸೇರಿರುತ್ತದೆ;

(ಎಲ್) "ನಿಯಮಿಸಲಾದುದು" ಎಂದರೆ, ಈ ಅಧಿನಿಯಮದಡಿಯಲ್ಲಿ ಸರ್ಕಾರವು ರಚಿಸಲಾದ ನಿಯಮಗಳ ಮೂಲಕ ನಿಯಮಿಸಲಾದುದು;

(ಎಂ) "ಒಂದು ಘಟಕ ಕಾಲೇಜಿಗೆ ಸಂಬಂಧಪಟ್ಟಂತೆ ಪ್ರಾಂಶುಪಾಲರು" ಎಂದರೆ, ಘಟಕ ಕಾಲೇಜಿನ ಮುಖ್ಯಸ್ಥರು ಮತ್ತು ಪ್ರಾಂಶುಪಾಲರು ಇಲ್ಲದಿದ್ದಲ್ಲಿ ಅಥವಾ ನೇಮಕವಾದ ಪ್ರಾಂಶುಪಾಲರ ಗೈರುಹಾಜರಿಯಲ್ಲಿ, ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ತಾತ್ಕಾಲಿಕವಾಗಿ ನೇಮಕಗೊಂಡಿರುವ ಉಪಪ್ರಾಂಶುಪಾಲರು ಅಥವಾ ಯಾವುದೇ ಇತರ ವ್ಯಕ್ತಿಯೂ ಇದರಲ್ಲಿ ಒಳಗೊಳ್ಳುತ್ತಾರೆ;

(ಎನ್) "ಕುಲಸಚಿವರು" ಎಂದರೆ, ವಿಶ್ವವಿದ್ಯಾಲಯದ ಕುಲಸಚಿವರು;

(ಒ) "ಪ್ರಾದೇಶಿಕ ಕೇಂದ್ರ" ಎಂದರೆ, ಯಾವುದೇ ಪ್ರದೇಶದಲ್ಲಿನ ಅಧ್ಯಯನ ಕೇಂದ್ರಗಳ ಕಾರ್ಯವನ್ನು ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ಮಾಡುವ ಉದ್ದೇಶಕ್ಕಾಗಿ ಮತ್ತು ಅಂಥ ಕೇಂದ್ರಕ್ಕೆ ವ್ಯವಸ್ಥಾಪನಾ ಮಂಡಳಿಯು ವಹಿಸಿಕೊಡಬಹುದಾದ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸುವುದಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಅಥವಾ ನಿರ್ವಹಿಸಿಕೊಂಡುಬರುವ ಒಂದು ಕೇಂದ್ರ;

(ಪಿ) ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ "ಪ್ರಾಯೋಜಕ ಪ್ರಾಧಿಕಾರ" ಅಥವಾ "ಪ್ರಾಯೋಜಕ ಸಂಸ್ಥೆ" ಎಂದರೆ, ನ್ಯಾಸ;

(ಕ್ಯೂ) "ರಾಜ್ಯ" ಎಂದರೆ, ಕರ್ನಾಟಕ ರಾಜ್ಯ;

(ಆರ್) "ಪರಿನಿಯಮಗಳು" ಮತ್ತು "ವಿನಿಯಮಗಳು" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಅನುಕ್ರಮವಾಗಿ ವಿಶ್ವವಿದ್ಯಾಲಯದ ಪರಿನಿಯಮಗಳು ಮತ್ತು ವಿನಿಯಮಗಳು;

(ಎಸ್) "ಅಧ್ಯಯನ ಕೇಂದ್ರ" ಎಂದರೆ, ವಿದ್ಯಾರ್ಥಿಗಳಿಗೆ ಅಗತ್ಯವಾದ ಬುದ್ಧಿವಾದ, ಸಲಹೆಗಳನ್ನು ನೀಡುವ ಅಥವಾ ಇತರ ಯಾವುದೇ ನೆರವನ್ನು ನೀಡುವ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಮತ್ತು ನಿರ್ವಹಿಸಿಕೊಂಡುಬಂದ ಒಂದು ಕೇಂದ್ರ;

(ಟಿ) "ಅಧ್ಯಾಪಕರು" ಎಂದರೆ, ಒಬ್ಬ ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಒಂದು ಘಟಕ ಕಾಲೇಜಿನಲ್ಲಿ ಬೋಧಿಸುವುದಕ್ಕೆ ಅಥವಾ ಸಂಶೋಧನೆ ನಡೆಸುವುದಕ್ಕೆ ಅಥವಾ ಸಂಶೋಧನೆಗೆ ಮಾರ್ಗದರ್ಶನ ನೀಡುವುದಕ್ಕೆ ನೇಮಕವಾದ ಅಂಥ ಇತರ ವ್ಯಕ್ತಿ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗವು ನಿಯಮಿಸಿದ ಗುಣಮಟ್ಟಗಳಿಗೆ ಅನುಸಾರವಾಗಿ ಇರುವ ಘಟಕ ಕಾಲೇಜಿನ ಪ್ರಾಂಶುಪಾಲರು ಇದರಲ್ಲಿ ಒಳಗೊಳ್ಳುತ್ತಾರೆ;

(ಯು) "ನ್ಯಾಸ" ಎಂದರೆ ವೆಲ್ಲೂರು ಶೈಕ್ಷಣಿಕ ಮತ್ತು ಧರ್ಮಾದಾಯ ನ್ಯಾಸ, ಬೆಂಗಳೂರು;

(ವಿ) "ವಿಶ್ವವಿದ್ಯಾಲಯ ಅನುದಾನಗಳ ಆಯೋಗ" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) 4ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ಆಯೋಗ;

(ಡಬ್ಲ್ಯೂ) "ವಿಶ್ವವಿದ್ಯಾಲಯ" ಎಂದರೆ, ಈ ಅಧಿನಿಯಮದಡಿಯಲ್ಲಿ ಸ್ಥಾಪಿಸಿ ನಿಗಮಿತಗೊಳಿಸಲಾದ ವೆಲ್ಲೂರು ತಾಂತ್ರಿಕ ಸಂಸ್ಥೆ, ಬೆಂಗಳೂರು;

(ಎಕ್ಸ್) "ಸಂದರ್ಶಕರು" ಎಂದರೆ, 13ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ವಿಶ್ವವಿದ್ಯಾಲಯದ ಸಂದರ್ಶಕರು.

## ಅಧ್ಯಾಯ– II

## ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

3. **ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ.–** (1) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಹಕ್ಕನ್ನು ನ್ಯಾಸವು ಹೊಂದಿರತಕ್ಕದ್ದು.

(2) ನ್ಯಾಸವು ರಾಜ್ಯ ಸರ್ಕಾರಕ್ಕೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವವನ್ನು ಸಲ್ಲಿಸತಕ್ಕದ್ದು.

(3) ನ್ಯಾಸವು ಈ ಮುಂದಿನ ವಿವರಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ನ್ಯಾಸದ ವಿವರಗಳೊಂದಿಗೆ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು;

(ii) ವಿಶ್ವವಿದ್ಯಾಲಯದ ವ್ಯಾಪ್ತಿ ಮತ್ತು ಸ್ಥಾನಮಾನ ಹಾಗೂ ಭೂಮಿಯ ಲಭ್ಯತೆ;

(iii) ಪ್ರಾರಂಭದ ದಿನಾಂಕದಿಂದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳಬೇಕೆಂದಿರುವ ಅಧ್ಯಯನ ಮತ್ತು ಸಂಶೋಧನಾ ಕಾರ್ಯಕ್ರಮಗಳ ಸ್ವರೂಪ ಮತ್ತು ಬಗೆಗಳು;

(iv) ಪ್ರಾರಂಭಿಸಬೇಕೆಂದು ಪ್ರಸ್ತಾಪಿಸಿರುವ ವ್ಯಾಸಂಗ ವಿಭಾಗಗಳು (ಫ್ಯಾಕಲ್ಟಿಗಳು), ಅಧ್ಯಯನ ಕ್ರಮಗಳು ಮತ್ತು ಸಂಶೋಧನೆಗಳ ಸ್ವರೂಪ;

(v) ಕಟ್ಟಡಗಳು, ಸಲಕರಣೆಗಳು ಮತ್ತು ರಚನಾ ಸೌಕರ್ಯಗಳನ್ನು ಒದಗಿಸುವಂಥ ಕ್ಯಾಂಪಸ್ ಅಭಿವೃದ್ಧಿ;

(vi) ಪ್ರಾರಂಭದ ದಿನಾಂಕದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಗಾಗಿ ಬಂಡವಾಳ ವೆಚ್ಚದ ಹಂತಗಳು;

(vii) ಬಾಬುವಾರು ಆವರ್ತಕ ವೆಚ್ಚ, ಆರ್ಥಿಕ ಮೂಲಗಳು ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ತಗಲುವ ಅಂದಾಜು ವೆಚ್ಚ;

(viii) ಸಂಪನ್ಮೂಲ ಸಂಗ್ರಹಣೆಗಾಗಿ ಯೋಜನೆ ಮತ್ತು ಅದಕ್ಕೆ ಬಂಡವಾಳದಿಂದ ತಗಲುವ ವೆಚ್ಚ ಹಾಗೂ ಪ್ರತಿಯೊಂದು ಮೂಲಕ್ಕೂ ಮರು ಸಂದಾಯ ಮಾಡುವ ರೀತಿ;

(ix) ವಿದ್ಯಾರ್ಥಿಗಳಿಂದ ಶುಲ್ಕ ವಸೂಲು ಮಾಡಿ ಆಂತರಿಕವಾಗಿ ನಿಧಿ ಸಂಗ್ರಹಿಸುವ ಯೋಜನೆ, ಸಲಹಾ ಸೇವೆ ಮತ್ತು ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಿಗೆ ಸಂಬಂಧಿಸಿದ ಇತರ ಚಟುವಟಿಕೆಗಳಿಂದ ನಿರೀಕ್ಷಿತ ವರಮಾನಗಳು ಮತ್ತು ಇತರ ನಿರೀಕ್ಷಿತ ವರಮಾನಗಳು;

(x) ಘಟಕವೊಂದಕ್ಕೆ ತಗಲುವ ವೆಚ್ಚದ ವಿವರಗಳು, ಆರ್ಥಿಕವಾಗಿ ದುರ್ಬಲವಾದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕ, ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿ ವೇತನದಲ್ಲಿ ನೀಡುವ ರಿಯಾಯಿತಿ ಅಥವಾ ವಿನಾಯತಿಯ ಪರಿಮಿತಿಯ ವಿವರಗಳನ್ನು ಮತ್ತು ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳಿಗೆ ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳು ಪ್ರಾಯೋಜಿಸಿದ ವಿದ್ಯಾರ್ಥಿಗಳಿಗೆ ಮತ್ತು ಭಾರತವನ್ನುಳಿದು ಇತರ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ವಿಧಿಸತಕ್ಕ ಶುಲ್ಕದ ದರಗಳು ಬೇರೆ ಬೇರೆ ಇದ್ದಲ್ಲಿ ಅವುಗಳನ್ನು ಸೂಚಿಸುವ ಶುಲ್ಕ ರಚನೆಯ ವಿವರಗಳು;

(xi) ಸಂಬಂಧಪಟ್ಟ ವಿದ್ಯಾ ವಿಭಾಗದಲ್ಲಿ ಎಷ್ಟು ವರ್ಷಗಳ ಅನುಭವ ಮತ್ತು ಪರಿಣಿತಿಯನ್ನು ನ್ಯಾಸವು ದೊರಕಿಸಿಕೊಡಲಿದೆ ಹಾಗೂ ಅದರ ಹಣಕಾಸಿನ ಸಂಪನ್ಮೂಲಗಳು;

(xii) ವಿಶ್ವವಿದ್ಯಾಲಯದಲ್ಲಿರುವ ಅಧ್ಯಯನ ಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕಾಗಿ ಇರುವ ವ್ಯವಸ್ಥೆ;

(xiii) ವಿಶ್ವವಿದ್ಯಾಲಯವು ಸ್ಥಾಪನೆಯಾಗುವುದಕ್ಕೆ ಮೊದಲು ನೆರವೇರಿಸಬೇಕೆಂದು ರಾಜ್ಯ ಸರ್ಕಾರವು ಅಗತ್ಯಪಡಿಸಬಹುದಾದ ಅಂಥ ಇತರ ಷರತ್ತುಗಳ ನೆರವೇರಿಕೆಯ ಹಂತ.

(4) ಸ್ವೀಕರಿಸಿದ ಪ್ರಸ್ತಾವಗಳನ್ನು ಪರೀಕ್ಷಿಸಲು ರಾಜ್ಯ ಸರ್ಕಾರವು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಪದನಿಮಿತ್ತ ಸದಸ್ಯರಾದ ಮೂರು ಸದಸ್ಯರುಗಳನ್ನು ಒಳಗೊಂಡ ಒಂದು ಪರಿಶೋಧನಾ ಸಮಿತಿಯನ್ನು ರಚಿಸತಕ್ಕದ್ದು ಮತ್ತು ಅದು ರಾಜ್ಯ ಸರ್ಕಾರಕ್ಕೆ ಶಿಫಾರಸ್ಸನ್ನು ಮಾಡತಕ್ಕದ್ದು.

**4. ವಿಶ್ವವಿದ್ಯಾಲಯದ ಸ್ಥಾಪನೆ.–** (1) ರಾಜ್ಯ ಸರ್ಕಾರವು ಪರಿಶೋಧನಾ ಸಮಿತಿಯು ಮಾಡಿದ ಶಿಫಾರಸ್ಸುಗಳನ್ನು ಪರಿಶೀಲಿಸಿದ ತರುವಾಯ ಮತ್ತು ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ,–

(i) ನ್ಯಾಸವು ಸಾಕಷ್ಟು ಮೂಲ ಸೌಕರ್ಯದೊಂದಿಗೆ ವಿಶ್ವವಿದ್ಯಾಲಯವೊಂದನ್ನು ನಡೆಸಲು ಸಮರ್ಥವಾಗಿದೆ ಎಂದು ಅದು ಮನಗಂಡರೆ;

(ii) ಪ್ರದೇಶಕ್ಕನುಸಾರವಾಗಿ ಕೆಳಗೆ ನಿರ್ದಿಷ್ಟ ಪಡಿಸಿದ ವ್ಯಾಪ್ತಿಗೆ ಭೂಮಿಯ ಒಡೆತನವನ್ನು ಹೊಂದಿರತಕ್ಕದ್ದು, ಎಂದರೆ:–

(ಎ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯೊಳಗಿದ್ದರೆ ಇಪ್ಪತ್ತೈದು ಎಕರೆಗಳು;

(ಬಿ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯಿಂದ ಹೊರಗೆ ಇದ್ದು, ಆದರೆ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಪ್ರದೇಶದ ಒಳಗೆ ಇದ್ದರೆ ನಲವತ್ತು ಎಕರೆಗಳು;

(ಸಿ) ಭೂಮಿಯು (ಎ) ಮತ್ತು (ಬಿ) ಖಂಡಗಳಲ್ಲಿ ನಿರ್ದಿಷ್ಟಪಡಿಸಿದ ಸ್ಥಳಗಳನ್ನು ಹೊರತುಪಡಿಸಿದ್ದರೆ ಅರವತ್ತು ಎಕರೆಗಳಿಗಿಂತ ಕಡಿಮೆ ಇರತಕ್ಕದ್ದಲ್ಲ.

ಮೇಲೆ ನಿರ್ದಿಷ್ಟಪಡಿಸಿದ ಭೂಮಿಯು ಏಕ ಘಟಕ(ಸಿಂಗಲ್ ಬ್ಲಾಕ್) ದಲ್ಲಿರತಕ್ಕದ್ದು ಮತ್ತು ಇದು ಸಂಬಂಧಪಟ್ಟ ನ್ಯಾಸ / ಪ್ರತಿಷ್ಠಾನ / ಸಂಸ್ಥೆ / ವಿಶ್ವವಿದ್ಯಾಲಯದ ಹೆಸರಿನಲ್ಲಿರತಕ್ಕದ್ದು. 3ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ಅಗತ್ಯಪಡಿಸಲಾದಂತೆ ನ್ಯಾಸವು ಒದಗಿಸಿದ ವಿವರಗಳ ಆಧಾರದ ಮೇಲೆ ಸರ್ಕಾರವು 47ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಬೇಕೆಂದು ನ್ಯಾಸಕ್ಕೆ ನಿರ್ದೇಶನ ನೀಡಬಹುದು.

(2) ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಸ್ಥಾಪನೆಯ ತರುವಾಯ, ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, "ವೆಲ್ಲೂರು ತಾಂತ್ರಿಕ ಸಂಸ್ಥೆ, ಬೆಂಗಳೂರು" ಎಂಬ ಹೆಸರಿನ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ರಾಜ್ಯದಲ್ಲಿ ಸ್ಥಾಪಿಸುವುದಕ್ಕೆ ಮಂಜೂರಾತಿಯನ್ನು ನೀಡಬಹುದು.

(3) ವಿಶ್ವವಿದ್ಯಾಲಯದ ಕೇಂದ್ರ ಕಾರ್ಯಸ್ಥಾನವು ಬೆಂಗಳೂರಿನಲ್ಲಿ ಇರತಕ್ಕದ್ದು. ವಿಶ್ವವಿದ್ಯಾಲಯವು ತನ್ನ ಕ್ಯಾಂಪಸ್ಸುಗಳನ್ನು ಅಥವಾ ಪ್ರಾದೇಶಿಕ ಕೇಂದ್ರಗಳನ್ನು, ಅಧ್ಯಯನ ಕೇಂದ್ರಗಳನ್ನು ಕರ್ನಾಟಕದ ಯಾವುದೇ ಭಾಗದಲ್ಲಿ ಹೊಂದಿರತಕ್ಕದ್ದು ಮತ್ತು ಆ ಬಗ್ಗೆ ರಾಜ್ಯ ಸರ್ಕಾರದ ಪೂರ್ವಾನುಮತಿಯನ್ನು ಪಡೆದುಕೊಳ್ಳುವುದಕ್ಕೊಳಪಟ್ಟು ಹಾಗೂ ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗನುಸಾರವಾಗಿ ಹೊಂದಿರತಕ್ಕದ್ದು.

(4) ಮೊದಲ ಕುಲಾಧಿಪತಿಯವರು, ಮೊದಲ ಕುಲಪತಿಯವರು, ಪ್ರಬಂಧಕ ಮಂಡಳಿಯ ಮೊದಲ ಸದಸ್ಯರುಗಳು, ವ್ಯವಸ್ಥಾಪನಾ ಮಂಡಳಿಯ ಹಾಗೂ ಶೈಕ್ಷಣಿಕ ಪರಿಷತ್ತಿನ ಮೊದಲ ಸದಸ್ಯರುಗಳು ಮತ್ತು ಇನ್ನು ಮುಂದೆ, ಅಂಥ ಅಧಿಕಾರಿಗಳು ಅಥವಾ ಸದಸ್ಯರುಗಳಾಗಬಹುದಾದಂಥ ಎಲ್ಲಾ ವ್ಯಕ್ತಿಗಳು, ಅಂಥ ಪದ ಅಥವಾ ಸದಸ್ಯತ್ವವನ್ನು ಹೊಂದಿರುವುದು ಮುಂದುವರೆಯುವವರೆಗೆ, ಒಂದು ನಿಗಮಿತ ನಿಕಾಯವನ್ನು ರಚಿಸತಕ್ಕದ್ದು. ಮತ್ತು ಅದು ವಿಶ್ವವಿದ್ಯಾಲಯದ ಹೆಸರಿನಲ್ಲಿ ದಾವೆ ಹೂಡಬಹುದು ಮತ್ತು ದಾವೆಗೊಳಗಾಗಬಹುದು.

(5) (2)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯವು ಸ್ಥಾಪನೆಗೆ ಮಂಜೂರಾತಿಯಾದ ಮೇಲೆ, ವಿಶ್ವವಿದ್ಯಾಲಯದ ಉದ್ದೇಶಕ್ಕಾಗಿ, ನ್ಯಾಸವು ಆರ್ಜಿಸಿದ, ಸೃಜಿಸಿದ, ಏರ್ಪಾಟು ಮಾಡಿಕೊಂಡ ಅಥವಾ ಕಟ್ಟಲ್ಪಟ್ಟ ಭೂಮಿ ಮತ್ತು ಇತರ ಸ್ಥಿರ ಮತ್ತು ಚರ ಸ್ವತ್ತು, ವಿಶ್ವವಿದ್ಯಾಲಯದಲ್ಲಿ ನಿಹಿತವಾಗಿರತಕ್ಕದ್ದು.

(6) ವಿಶ್ವವಿದ್ಯಾಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದ ಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂಥ ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

(7) ವಿಶ್ವವಿದ್ಯಾಲಯದಲ್ಲಿನ ಭೂಮಿ, ಕಟ್ಟಡ ಮತ್ತು ಇತರ ಸ್ವತ್ತುಗಳನ್ನು ವಿಶ್ವವಿದ್ಯಾಲಯದ ಉದ್ದೇಶಗಳಿಗೆ ಆನುಷಂಗಿಕವಾಗಿರುವುದನ್ನು ಹೊರತುಪಡಿಸಿ ಇತರ ಯಾವುದೇ ಉದ್ದೇಶಕ್ಕಾಗಿ ಬಳಸತಕ್ಕದ್ದಲ್ಲ.

**5. ಅನುದಾನಗಳು ಮತ್ತು ಹಣಕಾಸು ನೆರವು.–** ವಿಶ್ವವಿದ್ಯಾಲಯವು ಸ್ವಂತ ಧನಮೂಲ ಉಳ್ಳದ್ದಾಗಿರತಕ್ಕದ್ದು ಮತ್ತು ರಾಜ್ಯದಿಂದ ಅಥವಾ ರಾಜ್ಯದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಇತರ ಸಂಸ್ಥೆ ಅಥವಾ ನಿಗಮದಿಂದ ಯಾವುದೇ ನಿರ್ವಹಣಾ ಸಹಾಯ ಅನುದಾನ ಅಥವಾ ಯಾವುದೇ ಹಣಕಾಸು ನೆರವನ್ನು ಹಕ್ಕಿನಿಂದ ಕೇಳತಕ್ಕದ್ದಲ್ಲ ಅಥವಾ ಅದನ್ನು ಪಡೆಯಲು ಹಕ್ಕನ್ನು ಹೊಂದಿರತಕ್ಕದ್ದಲ್ಲ:

ಪರಂತು, ರಾಜ್ಯವು,–

(ಎ) ಇತರ ರಾಜ್ಯ ಸರ್ಕಾರದ ಸಂಘಟನೆಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿರುವಂಥದ್ದೇ ಸಂಶೋಧನೆ, ಅಭಿವೃದ್ಧಿ ಮತ್ತಿತರ ಚಟುವಟಿಕೆಗಳಿಗಾಗಿ; ಅಥವಾ

(ಬಿ) ಸರ್ಕಾರದಿಂದ ನೆರವನ್ನು ಪಡೆಯುವ ಯಾವುದೇ ನಿರ್ದಿಷ್ಟ ಸಂಶೋಧನೆ ಅಥವಾ ಕಾರ್ಯಕ್ರಮಗಳಿಗಾಗಿ; ಮತ್ತು

(ಸಿ) ರಾಜ್ಯ ಕಾರ್ಯನೀತಿಯ ಬದಲಾವಣೆಗೆ ಒಳಪಟ್ಟು ಅಥವಾ ಅನ್ಯಥಾ ಇದೇ ಬಗೆಯ ವಿಶ್ವವಿದ್ಯಾಲಯಗಳಿಗೆ ಅವಕಾಶವನ್ನು ಕಲ್ಪಿಸುವುದಕ್ಕೆ ಅಥವಾ ಅವುಗಳ ಪ್ರಯೋಜನಕ್ಕಾಗಿ.

– ಅನುದಾನದ ಮೂಲಕ ಅಥವಾ ಅನ್ಯಥಾ ಹಣಕಾಸು ಬೆಂಬಲವನ್ನು ಒದಗಿಸಬಹುದು:

ಮತ್ತು ಪರಂತು, ವಿಶ್ವವಿದ್ಯಾಲಯವು, ಯಾವುದೇ ಇತರ ಮೂಲದಿಂದ ಯಾವುದೇ ಆರ್ಥಿಕ ನೆರವನ್ನು ಸ್ವೀಕರಿಸಬಹುದು.

**6. ಘಟಕ ಕಾಲೇಜು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಅಥವಾ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದಕ್ಕೆ ಅಧಿಕಾರ.**- ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಐದು ವರ್ಷಗಳನ್ನು ಪೂರ್ಣಗೊಳಿಸಿದ ನಂತರ, ವಿಶ್ವವಿದ್ಯಾಲಯ ಅನುದಾನ ಆಯೋಗದ ಮತ್ತು ಇತರ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ಗುಣಮಟ್ಟಗಳಿಗೆ ಒಳಪಟ್ಟು, ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ, ವಿಶ್ವವಿದ್ಯಾಲಯವು, ರಾಜ್ಯದಲ್ಲಿ ತನಗೆ ಸೂಕ್ತವೆನಿಸುವಂಥ ಸ್ಥಳಗಳಲ್ಲಿ ಘಟಕ ಕಾಲೇಜುಗಳು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದಿರಬಹುದು.

**7. ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು.**- ವಿಶ್ವವಿದ್ಯಾಲಯವು, ತನ್ನ ಭವಿಷ್ಯದ್‌ದೃಷ್ಟಿ ಮತ್ತು ಧ್ಯೇಯೋದ್ದೇಶಗಳನ್ನು ಸಾಧಿಸಲು ಈ ಮುಂದಿನಂತೆ ವಿವಿಧ ಬಗೆಯ ಕಾರ್ಯತಂತ್ರಗಳನ್ನು ಕೈಗೊಳ್ಳಬಹುದು:-

(i) ಪ್ರಜ್ಞಾವಂತ ಸಮಾಜದ ಸೃಜನೆಗಾಗಿ ಸಾಮಾಜಿಕವಾದ ಸುಸಂಬದ್ಧ ಅವಶ್ಯಕತೆಗಳನ್ನು ಗಮನದಲ್ಲಿಟ್ಟುಕೊಂಡು ಸಂಶೋಧನೆ ಮತ್ತು ಬೋಧನೆಗಾಗಿ ಸುಭದ್ರ ನೆಲೆಗಟ್ಟನ್ನು ರೂಪಿಸುವುದು;

(ii) ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ನ್ಯಾಸಧಾರಿಗಳು ಯುಕ್ತವೆಂದು ಭಾವಿಸಬಹುದಾದಂಥ ಕಲೆ, ವಿಜ್ಞಾನ, ವಾಣಿಜ್ಯ, ಕಾನೂನು, ಇಂಜಿನಿಯರಿಂಗ್, ಮಾನವಿಕ ವಿಷಯಗಳು, ವೈದ್ಯಕೀಯ, ಔಷಧ ವಿಜ್ಞಾನ, ತತ್ಸಂಬಂಧಿತ ಆರೋಗ್ಯ ವಿಜ್ಞಾನಗಳು, ವ್ಯವಹಾರ ಆಡಳಿತ ನಿರ್ವಹಣೆ, ಕೃಷಿ, ಶಿಕ್ಷಣ ಮತ್ತು ಅಂಥ ಇತರ ವಿಷಯಗಳಲ್ಲಿ ಪದವಿ, ಸ್ನಾತಕೋತ್ತರ, ಡಾಕ್ಟೊರೇಟ್ ಪದವಿಯ (doctoral) ಮತ್ತು ಡಾಕ್ಟೊರೇಟ್ ಪದವಿ ನಂತರದ ವ್ಯಾಸಂಗ ವಿಷಯಗಳ ಕೋರ್ಸುಗಳವರೆಗೆ ಮತ್ತು ಅವುಗಳನ್ನು ಒಳಗೊಂಡಂತೆ ವಿಶ್ವವಿದ್ಯಾಲಯದ ಶಿಕ್ಷಣದ ಸುಧಾರಣೆಯನ್ನು ಬೆಂಬಲಿಸುವುದು, ಉತ್ತೇಜಿಸುವುದು ಮತ್ತು ಕೈಗೆತ್ತಿಕೊಳ್ಳುವುದು;

(iii) ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ವಿಶ್ವವಿದ್ಯಾಲಯದ ಗುಣಮಟ್ಟಗಳಿಗನುಸಾರವಾಗಿ ಶೈಕ್ಷಣಿಕ ಬದಲಾವಣೆ ಮತ್ತು ಸಾಮಾಜಿಕ ಹಾಗೂ ಮಾನವಾಭಿವೃದ್ಧಿ ಬಗ್ಗೆ ಅರಿವನ್ನುಂಟು ಮಾಡಲು ಮತ್ತು ಆ ಬಗ್ಗೆ ಕೊಡುಗೆ ನೀಡಲು ಕರ್ನಾಟಕದಲ್ಲಿನ ವಿವಿಧ ಸ್ಥಳಗಳಲ್ಲಿ ಕ್ಯಾಂಪಸ್ಸುಗಳನ್ನು ಸ್ಥಾಪಿಸುವುದು ಮತ್ತು ಅಧ್ಯಯನ ಕೇಂದ್ರಗಳು, ಸಂಯೋಜಿತ ಕಾಲೇಜುಗಳು ಮತ್ತು ಪ್ರಾದೇಶಿಕ ಕೇಂದ್ರಗಳನ್ನು ಹೊಂದುವುದು;

(iv) ವಾಣಿಜ್ಯೋದ್ಯಮ ಮತ್ತು ವಾಣಿಜ್ಯೋದ್ಯಮಿಗೆ ಸಂಬಂಧಿಸಿದ ಕ್ಷೇತ್ರಗಳಲ್ಲಿ ಸಂಶೋಧನೆ ನಡೆಸಲು ಸುಭದ್ರ ನೆಲೆಗಟ್ಟನ್ನು ರೂಪಿಸುವುದು ಮತ್ತು ಈಗಷ್ಟೆ ರೂಪುತಳೆಯುತ್ತಿರುವ ಕಂಪನಿಗಳಿಗೆ ಕಾರ್ಯತಂತ್ರದ ಸಲಹೆಗಳನ್ನು ಒದಗಿಸುವುದೂ ಒಳಗೊಂಡಂತೆ ಪ್ರಕರಣದ ಅಧ್ಯಯನಗಳನ್ನು ಅಭಿವೃದ್ಧಿಪಡಿಸುವುದು.

(v) ಮೌಲ್ಯಮಾಪನದ ವಿವಿಧ ಆಧುನಿಕ ವಿಧಾನಗಳ ಮೂಲಕ ಮಾಡಿದ ಮೌಲ್ಯಮಾಪನಕ್ಕೆ ಅನುಸಾರವಾಗಿ ಶಿಕ್ಷಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದುದರ ಆಧಾರದ ಮೇಲೆ ನೀಡಲು ಪದವಿಗಳನ್ನು, ಡಿಪ್ಲೋಮೋಗಳನ್ನು, ಪ್ರಮಾಣಪತ್ರಗಳನ್ನು ಮತ್ತು ಯಶೋಪತ್ರ ಪ್ರದಾನದಂಥ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(vi) ವಿದ್ಯಾರ್ಥಿಗಳಿಗೆ, ಬೋಧಕ ವೃಂದದ (ಫ್ಯಾಕಲ್ಟಿ) ಸದಸ್ಯರಿಗೆ ಮತ್ತು ಇತರರಿಗೆ ನಿರ್ದಿಷ್ಟ ಶೈಕ್ಷಣಿಕ ಮತ್ತು ಸಂಶೋಧನಾ ಕಾರ್ಯಕ್ರಮಗಳನ್ನು, ತರಬೇತಿ ಕಾರ್ಯಕ್ರಮಗಳನ್ನು ಮತ್ತು ವಿನಿಮಯ ಕಾರ್ಯಕ್ರಮಗಳನ್ನು ಏರ್ಪಡಿಸುವುದಕ್ಕಾಗಿ ಇತರ ಯಾವುದೇ ವಿಶ್ವವಿದ್ಯಾಲಯಗಳು, ಸಂಶೋಧನಾ ಸಂಸ್ಥೆಗಳು, ಲಾಭರಹಿತ ಸಂಸ್ಥೆಗಳು, ಕೈಗಾರಿಕಾ ಸಂಸ್ಥೆಗಳು, ವೃತ್ತಿಪರ ಸಂಸ್ಥೆಗಳು ಅಥವಾ ಇತರ ಸಂಸ್ಥೆಗಳೊಂದಿಗೆ ಸಹಯೋಗವನ್ನು ಹೊಂದುವುದು;

(vii) ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ, ಉತ್ತಮ ಗುಣಮಟ್ಟದ ಇತರ ಯಾವುವೇ ವಿಶ್ವವಿದ್ಯಾಲಯಗಳೊಂದಿಗೆ ಸಹಭಾಗಿಗಳಾಗಿ ವಿಶ್ವವಿದ್ಯಾಲಯದ ಬೋಧಕ ವೃಂದ (ಫ್ಯಾಕಲ್ಟಿ) ಮತ್ತು ಸಂಶೋಧಕರ ಅಭಿವೃದ್ಧಿ ಮತ್ತು ತರಬೇತಿಗಾಗಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು;

(viii) ರಾಜ್ಯ ಸರ್ಕಾರದ ಪೂರ್ವ ಅನುಮೋದನೆಯೊಡನೆ, ಯಾವುದೇ ಸಂಸ್ಥೆಯೊಂದಿಗೆ ಸಹಯೋಗ ಹೊಂದಿ ಸಂಶೋಧನೆಯನ್ನು ಮತ್ತು ಹೊಸತನವನ್ನು ಬೆಳಕಿಗೆ ತರುವುದು;

(ix) ಅನ್ವೇಷಣಾ ಸಮಸ್ಯಾ ಪರಿಹಾರಗಳನ್ನು ಹುಡುಕುವುದನ್ನು ಮತ್ತು ಸೃಜನಾತ್ಮಕತೆಯನ್ನು ಉತ್ತೇಜಿಸುವುದಕ್ಕೆ ಸಂಶೋಧನೆದಲ್ಲಿ ವಿದ್ಯಾರ್ಥಿಗಳನ್ನು ನಿರತರನ್ನಾಗಿಸುವುದು;

(x) ಉನ್ನತ ಕಲಿಕೆಗೆ ಪ್ರವೇಶಾವಕಾಶಗಳನ್ನು ಮತ್ತು ನ್ಯಾಯ ನೀತಿಗೆ ಉತ್ತೇಜನ ನೀಡುವ ದೃಷ್ಟಿಯಿಂದ, ಕಲಿಕೆಯ ವಿಧಾನಗಳು ಮತ್ತು ಸ್ಥಳಗಳು, ವ್ಯಾಸಂಗ ಕ್ರಮಗಳ ಸಂಯೋಜನೆ, ದಾಖಲಾತಿಗಾಗಿ ಅರ್ಹತೆ, ಪ್ರವೇಶದ ವಯಸ್ಸು, ಪರೀಕ್ಷೆಯನ್ನು ನಡೆಸುವುದು ಮತ್ತು ಕಾರ್ಯಕ್ರಮಗಳ ನಿರ್ವಹಣೆಗೆ ಸಂಬಂಧಿಸಿದಂತೆ ನಮ್ಯವಾದ (ಫ್ಲೆಕ್ಸಿಬಲ್) ಮತ್ತು ಮುಕ್ತವಾದ, ವಿಶ್ವವಿದ್ಯಾಲಯ ಮಟ್ಟದ ಶಿಕ್ಷಣದ ಅನ್ವೇಷಣಾ ಪದ್ಧತಿಯನ್ನು ಅಳವಡಿಸುವುದು ಹಾಗೂ ಜ್ಞಾನದ ಹೊಸ ಕ್ಷೇತ್ರಗಳಲ್ಲಿ ಉತ್ಕೃಷ್ಟತೆಗೆ ಪ್ರೋತ್ಸಾಹಿಸುವುದು, ಶೈಕ್ಷಣಿಕ ಮತ್ತು ಸಮನ್ವಯ ಕಲಿಕೆ, ಇವೆರಡಕ್ಕೂ ಸಮನಾದ ಪ್ರಾಮುಖ್ಯತೆಯನ್ನು ನೀಡುವುದು;

(xi) ತನ್ನ ಕಾರ್ಯನೀತಿಗಳು ಮತ್ತು ಕಾರ್ಯಕ್ರಮಗಳ ಮೂಲಕ ರಾಷ್ಟ್ರೀಯ ಸಮಗ್ರತೆ ಮತ್ತು ಮಾನವ ವ್ಯಕ್ತಿತ್ವದ ಸಮಗ್ರ ವಿಕಾಸಕ್ಕೆ ಪ್ರೋತ್ಸಾಹಿಸುವುದು;

(xii) ರೋಗವನ್ನು ಗುಣಪಡಿಸುವುದು, ಪರಿಸರ ಸಂರಕ್ಷಣೆ ಮತ್ತು ಸುಧಾರಣೆ, ಪುನರ್ನವೀಕರಣಗೊಳ್ಳುವ ಇಂಧನ, ಸಮರ್ಥವಾದ ಕೈಗಾರಿಕಾ ಪದ್ಧತಿಗಳು, ವ್ಯವಹಾರ ನಿರ್ವಹಣೆ ಆಡಳಿತ ಮತ್ತು ಸಾಮಾಜಿಕ – ಆರ್ಥಿಕ ಅಭಿವೃದ್ಧಿಯಂಥ ಕ್ಷೇತ್ರಗಳಲ್ಲಿ ಆದರೆ ಅವುಗಳಿಗೆ ಮಾತ್ರ ಸೀಮಿತವಾಗಿರದೆ, ಸಮಸ್ಯೆಗಳನ್ನು ಪರಿಹರಿಸುವುದಕ್ಕೆ ವಿವಿಧ ವಿದ್ಯಾ ವಿಭಾಗಗಳಲ್ಲಿ ವಿವಿಧ ಸಂಶೋಧನಾ ಕಾರ್ಯಕ್ರಮಗಳನ್ನು ಉತ್ತೇಜಿಸುವುದು ಮತ್ತು ಕೈಗೊಳ್ಳುವುದು;

(xiii) ಕೌಶಲಗಳ ವೃದ್ಧಿಗಾಗಿ ಕೈಗಾರಿಕೆಗಳಲ್ಲಿ ನಿಯೋಜಿತರಾದ ಜನರ ಶಿಕ್ಷಣದ ಮುಂದುವರಿಕೆಗಾಗಿ ಕಾರ್ಯಕ್ರಮಗಳನ್ನು ರೂಪಿಸುವುದು;

(xiv) ಕೈಗಾರಿಕಾ ಯೋಜನೆಗಳಲ್ಲಿ ವಿದ್ಯಾರ್ಥಿಗಳನ್ನು ಮತ್ತು ಬೋಧಕ ಸಿಬ್ಬಂದಿಯನ್ನು ನಿರತಗೊಳಿಸುವುದು;

(xv) ಸಮಾಲೋಚನ ಕಾರ್ಯಭಾರಗಳ ಮೂಲಕ ಕೈಗಾರಿಕೆಗಳ ಉತ್ಪಾದಕತೆಗೆ ಕೊಡುಗೆಯನ್ನು ನೀಡುವುದು;

(xvi) ಬೋಧನೆ ಮತ್ತು ಸಹಯೋಗದ ಮೂಲಕ ವಿದ್ಯಾರ್ಥಿಗಳಲ್ಲಿ, ಹಳೆ ವಿದ್ಯಾರ್ಥಿಗಳಲ್ಲಿ ಹಾಗೂ ಕೈಗಾರಿಕಾ ಪಾಲುದಾರರಲ್ಲಿ ಉದ್ಯಮಶೀಲತೆಯನ್ನು ಪ್ರೋತ್ಸಾಹಿಸುವುದು;

(xvii) ವಿಚಾರ ಗೋಷ್ಠಿಗಳು, ಕಾರ್ಯಾಗಾರಗಳು, ಉಪನ್ಯಾಸ ಮಾಲಿಕೆಗಳು, ಚರ್ಚೆಗಳು, ಸಮ್ಮೇಳನಗಳು, ನಿರಂತರ ಶಿಕ್ಷಣ ಕಾರ್ಯಕ್ರಮಗಳು, ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳು, ಪ್ರಕಟಣೆಗಳು, ತರಬೇತಿ ಕಾರ್ಯಕ್ರಮಗಳು ಹಾಗೂ ಉದ್ಯಮಶೀಲತೆಯ ಮೂಲಕ ರಾಷ್ಟ್ರೀಯ ಮತ್ತು ಅಂತರ ರಾಷ್ಟ್ರೀಯ ಪ್ರಾಮುಖ್ಯ ವಿಷಯಗಳ ಬಗ್ಗೆ ಸಾರ್ವಜನಿಕರು ಮತ್ತು ಖಾಸಗಿ ಆಹ್ವಾನಿತರಲ್ಲಿ ತಿಳುವಳಿಕೆ ಮತ್ತು ಸ್ಫೂರ್ತಿಯನ್ನು ವೃದ್ಧಿಗೊಳಿಸುವುದು;

(xviii) ಉದಾಹರಣೆಯ ಮೂಲಕ ಬೋಧನೆ, ಕಲಿಕೆ ಮತ್ತು ಮುನ್ನಡೆಯ ಮೂಲಕ ಸಾಮಾಜಿಕ ಉದ್ಯಮಶೀಲತಾ ಕಾರ್ಯಕ್ರಮಗಳನ್ನು ಅಭಿವೃದ್ಧಿಗೊಳಿಸುವುದು;

(xix) ಸಮಾಜದ ಗ್ರಾಮೀಣ ಮತ್ತು ನಗರ ವರ್ಗಗಳ ಅಭಿವೃದ್ಧಿಗೆ ಸಂಬಂಧಿಸಿದ ಅಭಿವೃದ್ಧಿ ಚಟುವಟಿಕೆಗಳನ್ನು ಕೈಗೊಳ್ಳುವುದು;

(xx) ಜಾಗತಿಕ ಜ್ಞಾನವನ್ನು ಒಟ್ಟುಗೂಡಿಸುವ ಮೂಲಕ ಗಂಭೀರ ಸಮಸ್ಯೆಗಳನ್ನು ಪರಿಹರಿಸಲು ಅಭಿವೃದ್ಧಿಶೀಲ, ಅನಭಿವೃದ್ಧಿ ಮತ್ತು ಅಭಿವೃದ್ಧಿ ಹೊಂದಿದ ರಾಷ್ಟ್ರಗಳೊಂದಿಗೆ ಸಹಹೋಗ.

**8. ವಿಶ್ವವಿದ್ಯಾಲಯದ ಅಧಿಕಾರಗಳು.–** ವಿಶ್ವವಿದ್ಯಾಲಯವು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗೆ ಅನುಸಾರವಾಗಿ ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿರ್ಧರಿಸಬಹುದಾದಂತೆ ಕ್ಯಾಂಪಸ್ಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಕರ್ನಾಟಕದಲ್ಲಿ ಸ್ಥಾಪಿಸುವುದು ಮತ್ತು ನಿರ್ವಹಿಸುವುದು;

(ii) ವಿಶ್ವವಿದ್ಯಾಲಯದ ಉದ್ದೇಶವನ್ನು ಕಾರ್ಯರೂಪಕ್ಕೆ ತರುವಲ್ಲಿ ಅಗತ್ಯವಾಗಬಹುದಾದ ಅಥವಾ ಕಾರ್ಯಸಾಧ್ಯವಾಗಬಹುದಾದ ಎಲ್ಲಾ ಅಂಥ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು;

(iii) ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಮತ್ತು ಷರತ್ತುಗಳಿಗೊಳಪಟ್ಟು ಪದವಿಗಳು ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರದಾನಮಾಡುವುದು;

(iv) ಪರಿನಿಯಮಗಳನ್ವಯ ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿ ವೇತನಗಳು ಮತ್ತು ಬಹುಮಾನಗಳು, ಅವಾರ್ಡುಗಳು, ಪಾರಿತೋಷಕಗಳು ಇತ್ಯಾದಿಗಳನ್ನು ಸ್ಥಾಪಿಸುವುದು ಮತ್ತು ನೀಡುವುದು;

(v) ಪರಿನಿಯಮಗಳಲ್ಲಿ ಅಥವಾ ಸಂದರ್ಭಾನುಸಾರವಾಗಿ ನಿಯಮಗಳಲ್ಲಿ ನಿಗದಿಪಡಿಸಬಹುದಾದ ಅಂಥ ಶುಲ್ಕಗಳು, ಬಿಲ್ಲುಗಳು, ಖರೀದಿ ಪಟ್ಟಿಗಳನ್ನು ಕೇಳಿಪಡೆದುಕೊಳ್ಳುವುದು ಮತ್ತು ಸ್ವೀಕರಿಸುವುದು ಹಾಗೂ ಚಾರ್ಜುಗಳನ್ನು ವಸೂಲು ಮಾಡುವುದು;

(vi) ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಪಠ್ಯೇತರ ಚಟುವಟಿಕೆಗಳಿಗೆ ಅವಕಾಶಗಳನ್ನು ಕಲ್ಪಿಸುವುದು;

(vii) ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಕ್ಯಾಂಪಸುಗಳ, ಪ್ರಾದೇಶಿಕ ಕೇಂದ್ರಗಳ, ಅಧ್ಯಯನ ಕೇಂದ್ರಗಳ ಫ್ಯಾಕಲ್ಟಿ, ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವುದು;

(viii) ವಿಶ್ವವಿದ್ಯಾಲಯದ ಅಥವಾ ಒಂದು ಘಟಕ ಕಾಲೇಜಿನ ಅಥವಾ ಕ್ಯಾಂಪಸ್ಸಿನ, ಪ್ರಾದೇಶಿಕ ಕೇಂದ್ರದ, ಅಧ್ಯಯನ ಕೇಂದ್ರದ ಉದ್ದೇಶಕ್ಕಾಗಿ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದಿರುವ, ಯಾವುದೇ ರೀತಿಯ ಸ್ವಯಂ ದೇಣಿಗೆಗಳು ಮತ್ತು ಕೊಡುಗೆಗಳನ್ನು ಸ್ವೀಕರಿಸುವುದು ಮತ್ತು ನ್ಯಾಸ ಮತ್ತು ದತ್ತಿ ಸ್ವತ್ತುಗಳೂ ಸೇರಿದಂತೆ, ಯಾವುದೇ ಚರ ಅಥವಾ ಸ್ಥಿರ ಸ್ವತ್ತನ್ನು ಆರ್ಜಿಸುವುದು, ಹೊಂದಿರುವುದು, ನಿರ್ವಹಿಸುವುದು, ನಡೆಸುವುದು ಮತ್ತು ಹಸ್ತಾಂತರ ಮಾಡುವುದು;

(ix) ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸಿಕೊಂಡು ಬರುವುದು ಹಾಗೂ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ ವಿದ್ಯಾರ್ಥಿಗಳಿಗೆ ವಸತಿ ಸ್ಥಳಗಳಾಗಿ ಮಾನ್ಯತೆ ನೀಡುವುದು;

(x) ವಸತಿಯ ಮೇಲ್ವಿಚಾರಣೆ ಮಾಡುವುದು ಮತ್ತು ನಿಯಂತ್ರಣ ಮಾಡುವುದು ಹಾಗೂ ವಿದ್ಯಾರ್ಥಿಗಳು ಮತ್ತು ಎಲ್ಲಾ ಪ್ರವರ್ಗಗಳ ಸಿಬ್ಬಂದಿಗಳಲ್ಲಿ ಶಿಸ್ತು ನಿಯಂತ್ರಣ ಮಾಡುವುದು ಮತ್ತು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ನಡತೆ ಸಂಹಿತೆಯನ್ನು ರೂಪಿಸುವುದೂ ಒಳಗೊಂಡಂತೆ, ಅಂಥ ಸಿಬ್ಬಂದಿಗಳ ಸೇವಾಷರತ್ತುಗಳನ್ನು ನಿರೂಪಿಸುವುದು;

(xi) ಶೈಕ್ಷಣಿಕ, ಆಡಳಿತಾತ್ಮಕ ಮತ್ತು ಬೆಂಬಲ ಸಿಬ್ಬಂದಿಯ ಹುದ್ದೆಗಳನ್ನು ಮತ್ತು ಇತರ ಅವಶ್ಯ ಹುದ್ದೆಗಳನ್ನು ಸೃಜಿಸುವುದು;

(xii) ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ಉದ್ದೇಶಗಳಿಗಾಗಿ ಇತರ ವಿಶ್ವವಿದ್ಯಾಲಯಗಳೊಡನೆ ಸಹಕರಿಸುವುದು ಮತ್ತು ಸಹಯೋಗ ಹೊಂದುವುದು;

(xiii) ಶಿಕ್ಷಕರಿಗೆ, ಪಾಠಗಳನ್ನು ರಚಿಸುವವರಿಗೆ, ಮೌಲ್ಯಮಾಪಕರಿಗೆ ಮತ್ತಿತರ ಶೈಕ್ಷಣಿಕ ಸಿಬ್ಬಂದಿಗೆ ಪುನರ್ಮನನ ವ್ಯಾಸಂಗಕ್ರಮಗಳು, ಅಭಿಮುಖ ವ್ಯಾಸಂಗ ಕ್ರಮಗಳು, ಕಾರ್ಯಾಗಾರಗಳು, ವಿಚಾರಗೋಷ್ಠಿಗಳು ಮತ್ತಿತರ ಕಾರ್ಯಕ್ರಮಗಳನ್ನು ಏರ್ಪಡಿಸುವುದು ಮತ್ತು ನಡೆಸುವುದು;

(xiv) ಶೈಕ್ಷಣಿಕ ಪರಿಷತ್ತಿನ ಅನುಮೋದನೆಯೊಂದಿಗೆ ವಿಶ್ವವಿದ್ಯಾಲಯಕ್ಕೆ ಅಥವಾ ಘಟಕ ಕಾಲೇಜಿಗೆ, ಪ್ರಾದೇಶಿಕ ಕೇಂದ್ರಗಳಿಗೆ, ಅಧ್ಯಯನ ಕೇಂದ್ರಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮತ್ತು ಈ ಅಧಿನಿಯಮದಲ್ಲಿ ಕಲ್ಪಿಸಿದ ವ್ಯಾಪ್ತಿಗಿಂತ ಕಡಿಮೆಯಿಲ್ಲದಂತೆ ಕರ್ನಾಟಕದ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮಾನಕ ಗುಣಮಟ್ಟಗಳನ್ನು ನಿರ್ಧರಿಸುವುದು;

(xv) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಕಾರ್ಯರೂಪಕ್ಕೆ ತರಲು ಅವಶ್ಯವಾಗಬಹುದಾದಂಥ ಇತರ ಎಲ್ಲಾ ಕ್ರಮಗಳನ್ನು ಅಥವಾ ಕಾರ್ಯಗಳನ್ನು, ಅವು ಮೇಲೆ ಹೇಳಿದ ಅಧಿಕಾರಗಳಿಗೆ ಪ್ರಾಸಂಗಿಕವಾಗಿರಲಿ ಅಥವಾ ಇಲ್ಲದಿರಲಿ, ಕೈಗೊಳ್ಳುವುದು;

(xvi) ಪರೀಕ್ಷೆಗಳ ಆಧಾರದ ಮೇಲೆ ಅಥವಾ ಸರ್ಕಾರದಿಂದ ಅನುಮೋದಿತವಾದ ಇತರ ಯಾವುದೇ ಮೌಲ್ಯಮಾಪನ ವಿಧಾನದ ಆಧಾರದ ಮೇಲೆ ನೀಡಲು ಪದವಿಗಳು, ಡಿಪ್ಲೋಮಾಗಳು, ಪ್ರಮಾಣಪತ್ರಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಸ್ಥಾಪಿಸುವುದು;

(xvii) ಫಿಲಂಗಳು, ಕ್ಯಾಸೆಟ್‌ಗಳು, ಧ್ವನಿಸುರುಳಿಗಳು, ದೃಶ್ಯಸುರುಳಿಗಳು, ಸಿ.ಡಿ., ವಿ.ಸಿ.ಡಿ. ಮತ್ತು ಇತರ ತಂತ್ರಾಂಶಗಳೂ ಹಾಗೂ ಇತರ ಸಂಬಂಧಿತ ವಿದ್ಯುನ್ಮಾನ ಮತ್ತು ಮುದ್ರಣ ಮಾಧ್ಯಮ ಸೇರಿದಂತೆ ಬೋಧಕ ಸಾಮಗ್ರಿಗಳನ್ನು ತಯಾರಿಸುವುದಕ್ಕಾಗಿ ಅವಕಾಶ ಕಲ್ಪಿಸುವುದು;

(xviii) ಪ್ರಬಂಧಕ ಮಂಡಳಿಯ ಅನುಮೋದನೆಯೊಡನೆ ವಿಶ್ವವಿದ್ಯಾಲಯದ ಉದ್ದೇಶಗಳಿಗಾಗಿ ವಿಶ್ವವಿದ್ಯಾಲಯದ ಸ್ವತ್ತುಗಳನ್ನು ಭದ್ರತೆಯಾಗಿ ನೀಡಿ ಅಥವಾ ನೀಡದೆ ಹಣವನ್ನು ಪಡೆಯುವುದು, ಸಂಗ್ರಹಿಸುವುದು, ಚಂದಾದಾರರಾಗುವುದು ಮತ್ತು ಸಾಲ ಪಡೆಯುವುದು;

(xix) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುದೇ ಇತರ ಶೈಕ್ಷಣಿಕ ಸಂಸ್ಥೆಗಳ ಆಡಳಿತವನ್ನು ವಶಪಡಿಸಿಕೊಳ್ಳುವುದು, ವಹಿಸಿಕೊಳ್ಳುವುದು ಮತ್ತು ನಡೆಸುವುದು;

(xx) ವ್ಯವಸ್ಥಾಪನಾ ಮಂಡಳಿಯ ಪೂರ್ವಾನುಮೋದನೆಯೊಂದಿಗೆ ಸ್ವತ್ತುಗಳನ್ನು ಆರ್ಜಿಸುವುದು;

(xxi) ವಿಶ್ವವಿದ್ಯಾಲಯದ ಮೇಲಿನ ಉದ್ದೇಶಗಳಿಗೆ ಸಂಬಂಧಿಸಿದ ಅಥವಾ ಪ್ರಾಸಂಗಿಕವಾದ ಯಾವುದೇ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು.

**9. ವಿಶ್ವವಿದ್ಯಾಲಯವು ಎಲ್ಲಾ ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲರಿಗೂ ಮುಕ್ತವಾಗಿರತಕ್ಕದ್ದು.**– ವಿಶ್ವವಿದ್ಯಾಲಯದ ಪ್ರವೇಶಗಳು ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲಾ ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು. ಎಲ್ಲಾ ಪ್ರವೇಶಗಳನ್ನು ಅರ್ಹತಾ ಪರೀಕ್ಷೆಗಳಲ್ಲಿನ ಅರ್ಹತೆಯ ಆಧಾರದ ಮೇಲೆ ಮಾಡತಕ್ಕದ್ದು:

ಪರಂತು, ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳ ಪ್ರವೇಶದಲ್ಲಿ ಶೇಕಡಾ ನಲವತ್ತರಷ್ಟನ್ನು ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ಮೀಸಲಿಡತಕ್ಕದ್ದು ಮತ್ತು ಪ್ರವೇಶಗಳನ್ನು ರಾಜ್ಯ ಸರ್ಕಾರವು ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡತಕ್ಕದ್ದು ಮತ್ತು ಸೀಟುಗಳನ್ನು ಅರ್ಹತ ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ರೂಪಿಸುವ ಮೀಸಲಾತಿ ನೀತಿಗೆ ಅನುಸಾರವಾಗಿ ಹಂಚಿಕೆ ಮಾಡತಕ್ಕದ್ದು:

ಮತ್ತು ಪರಂತು, ಯಾವುದೇ ಕೋರ್ಸಿನಲ್ಲಿ ಹತ್ತಕ್ಕಿಂತ ಕಡಿಮೆ ಸೀಟುಗಳು ಇರುವಲ್ಲಿ, ಸ್ನಾತಕೋತ್ತರ ಇಂಥ ಕೋರ್ಸುಗಳನ್ನು ಒಟ್ಟಿಗೆ ಒಂದುಗೂಡಿಸುವ ಮೂಲಕ ಮೀಸಲಿಡತಕ್ಕದ್ದು ಮತ್ತು ಯಾವುದೇ ಕೋರ್ಸಿನಲ್ಲಿ ಮೂರು ಸೀಟುಗಳಿಗಿಂತ ಕಡಿಮೆ ಇರುವಲ್ಲಿ, ಅವುಗಳನ್ನು ಸರದಿ ಸುತ್ತಿನಲ್ಲಿ ಮೀಸಲಿಡತಕ್ಕದ್ದು.

**10. ರಾಷ್ಟ್ರೀಯ ಅಧಿಮಾನ್ಯತೆ.**– ವಿಶ್ವವಿದ್ಯಾಲಯವು ಪ್ರಾರಂಭವಾದ ತರುವಾಯ ಆದಷ್ಟು ಬೇಗನೆ ಸಂಬಂಧಪಟ್ಟ ಶಾಸನಾತ್ಮಕ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳಿಂದ ಅಧಿಮಾನ್ಯತೆಯನ್ನು ಕೋರತಕ್ಕದ್ದು ಮತ್ತು ಖಾಸಗಿ ವಿಶ್ವವಿದ್ಯಾಲಯಗಳು ನಡೆಸುವ ಎಲ್ಲಾ ವ್ಯಾಸಂಗ ಕ್ರಮಗಳು ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ವಿನಿಯಮಗಳಿಗೆ ಅನುಸಾರವಾಗಿ ಇರತಕ್ಕದ್ದು.

**11. ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು.**– ಪ್ರಾಯೋಜಕ ಸಂಸ್ಥೆಯು ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದಂತೆ ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಇವುಗಳಲ್ಲಿ ಪ್ರತಿಯೊಂದನ್ನು ಪ್ರಾಯೋಜಕ ಸಂಸ್ಥೆಯು ತನ್ನ ವಿವೇಚನಾನುಸಾರ ಚಲಾಯಿಸಬಹುದು, ಎಂದರೆ:–

(i) ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಪುನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(ii) ವಿಶ್ವವಿದ್ಯಾಲಯದ ಪ್ರಥಮ ಪ್ರಬಂಧಕ ಮಂಡಳಿಯನ್ನು ರಚಿಸುವುದು;

(iii) ಪ್ರಬಂಧಕ ಮಂಡಳಿಯ ಅಧ್ಯಕ್ಷರನ್ನು ನಾಮನಿರ್ದೇಶಿಸುವುದು;

(iv) ಪ್ರಬಂಧಕ ಮಂಡಳಿಯ ಸದಸ್ಯರಾಗಿ ಮೂರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(v) ವ್ಯವಸ್ಥಾಪನಾ ಮಂಡಳಿಯ ಸದಸ್ಯರಾಗಿ ಇಬ್ಬರು ವ್ಯಕ್ತಿಗಳನ್ನು ನಾಮ ನಿರ್ದೇಶಿಸುವುದು;

(vi) ವಿಶ್ವವಿದ್ಯಾಲಯದ ದತ್ತಿ ನಿಧಿಗೆ ದೇಣಿಗೆ ನೀಡಲು ನಿಧಿ ಮೂಲಗಳನ್ನು ನಿರ್ಧರಿಸುವುದು;

(vii) ವಿಶ್ವವಿದ್ಯಾಲಯದ ಹಣದ ವಿನಿಯೋಗ ಮತ್ತು ವೆಚ್ಚ ಮಾಡುವುದನ್ನು ನಿರ್ಧರಿಸುವುದು;

(viii) ಈ ಅಧಿನಿಯಮದಲ್ಲಿ ಉಪಬಂಧಿಸಿರುವ ವಿಧಾನದಲ್ಲಿ ಪ್ರಬಂಧಕ ಮಂಡಳಿಯ ಸಭೆಯಲ್ಲಿಯ ವಿವಾದಗಳನ್ನು ಬಗೆಹರಿಸುವುದು;

## ಅಧ್ಯಾಯ - III

## ವಿಶ್ವವಿದ್ಯಾಲಯದ ಅಧಿಕಾರಿಗಳು

12. **ವಿಶ್ವವಿದ್ಯಾಲಯದ ಅಧಿಕಾರಿಗಳು.–** ಈ ಮುಂದಿನವರು ವಿಶ್ವವಿದ್ಯಾಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:–

(i) ಸಂದರ್ಶಕರು;

(ii) ಸಹ–ಸಂದರ್ಶಕರು;

(iii) ಕುಲಾಧಿಪತಿಗಳು;

(iv) ಕುಲಪತಿಗಳು;

(v) ಸಹಕುಲಪತಿಗಳು;

(vi) ಕುಲಸಚಿವರು;

(vii) ಹಣಕಾಸು ಅಧಿಕಾರಿ; ಮತ್ತು

(viii) ಪರಿನಿಯಮಗಳ ಮೂಲಕ ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಘೋಷಿಸಬಹುದಾದಂಥ ಇತರ ಅಧಿಕಾರಿಗಳು.

13. **ಸಂದರ್ಶಕರು.–** (1) ಕರ್ನಾಟಕದ ಘನತೆವೆತ್ತ ರಾಜ್ಯಪಾಲರು ವಿಶ್ವವಿದ್ಯಾಲಯದ ಸಂದರ್ಶಕರಾಗಿರತಕ್ಕದ್ದು ಮತ್ತು ಸಂದರ್ಶಕರು ವಿಶ್ವವಿದ್ಯಾಲಯದ ಕಾರ್ಯನಿರ್ವಹಣೆಯ ಸುಧಾರಣೆಗಾಗಿ ಸಲಹೆಗಳನ್ನು ನೀಡಬಹುದು.

(2) ಸಂದರ್ಶಕರು, ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಸಂದರ್ಶಕರು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ವ್ಯವಹಾರಗಳಿಗೆ ಸಂಬಂಧಿಸಿದಂತೆ, ಯಾವುದೇ ಪತ್ರ ಅಥವಾ ಮಾಹಿತಿಯನ್ನು ತರಿಸಿಕೊಳ್ಳುವುದು.

(ii) ಸಂದರ್ಶಕರು, ಅವರು ಸ್ವೀಕರಿಸಿದ ಮಾಹಿತಿಯ ಆಧಾರದ ಮೇಲೆ ವಿಶ್ವವಿದ್ಯಾಲಯಗಳ ಯಾವುದೇ ಪ್ರಾಧಿಕಾರವು ಮಾಡಿದ ಯಾವುದೇ ಆದೇಶ, ನಡೆಸಿದ ವ್ಯವಹರಣೆಗಳು ಅಥವಾ ಕೈಗೊಂಡ ತೀರ್ಮಾನಗಳು, ಈ ಅಧಿನಿಯಮ, ವಿನಿಯಮಗಳು ಅಥವಾ ನಿಯಮಗಳಿಗೆ ಪೂರಕವಾಗಿಲ್ಲವೆಂದು ಮನಗಂಡರೆ ಅವರು ವಿಶ್ವವಿದ್ಯಾಲಯದ ಹಿತಾಸಕ್ತಿಯಿಂದ ತಾವು ಸೂಕ್ತವೆಂದು ಭಾವಿಸಬಹುದಾದಂಥ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಹಾಗೆ ಹೊರಡಿಸಿದ ನಿರ್ದೇಶನಗಳನ್ನು ಸಂಬಂಧಪಟ್ಟವರೆಲ್ಲರೂ ಪಾಲಿಸತಕ್ಕದ್ದು.

14. **ಸಹ–ಸಂದರ್ಶಕರು.–** (1) ಕರ್ನಾಟಕ ಸರ್ಕಾರದ ಮಾನ್ಯ ಉನ್ನತ ಶಿಕ್ಷಣ ಸಚಿವರು ವಿಶ್ವವಿದ್ಯಾಲಯದ ಸಹ–ಸಂದರ್ಶಕರಾಗಿರತಕ್ಕದ್ದು.

(2) ಸಂದರ್ಶಕರ ಅನುಪಸ್ಥಿತಿಯಲ್ಲಿ ಸಹ–ಸಂದರ್ಶಕರು ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

15. **ಕುಲಾಧಿಪತಿಗಳು.–** (1) ಕುಲಾಧಿಪತಿಯವರನ್ನು ಪ್ರಾಯೋಜಕ ಸಂಸ್ಥೆಯು ನೇಮಿಸತಕ್ಕದ್ದು.

(2) ಪ್ರಾಯೋಜಕ ಸಂಸ್ಥೆಯ ಸಂಸ್ಥಾಪಿತ ನ್ಯಾಸಧಾರಿಯು ಮೊದಲನೇ ಕುಲಾಧಿಪತಿಗಳಾಗಿರತಕ್ಕದ್ದು, ಅವರು ತಮ್ಮ ಜೀವನಪರ್ಯಂತ ಅಥವಾ ಅವರು ತಮ್ಮ ಪದವನ್ನು ಬಿಟ್ಟುಕೊಡುವವರೆಗೆ ಕುಲಾಧಿಪತಿಗಳಾಗಿ ಪದಧಾರಣ ಮಾಡಿರತಕ್ಕದ್ದು.

(3) ತದನಂತರದ ಕುಲಾಧಿಪತಿಗಳು, ಅಂಥ ನೇಮಕಾತಿಯನ್ನು ಪರಿಗಣಿಸುವ ಸಂದರ್ಭದಲ್ಲಿ ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ, ಪ್ರಾಯೋಜಕ ಸಂಸ್ಥೆಯ ನ್ಯಾಸಧಾರಿಯಾಗಿರತಕ್ಕದ್ದು ಅಥವಾ ಶಿಕ್ಷಣ, ವಿಜ್ಞಾನ, ಸಂಸ್ಕೃತಿ ಅಥವಾ ಸಾರ್ವಜನಿಕ ಜೀವನ ಕ್ಷೇತ್ರಗಳಲ್ಲಿ ರಾಷ್ಟ್ರೀಯ ಮಟ್ಟದ ಛಾಪನ್ನು ಪಡೆದಿರುವ ಅಂಥ ಇತರ ವ್ಯಕ್ತಿಯಾಗಿರತಕ್ಕದ್ದು.

(4) ಹಾಗೆ ನೇಮಕಗೊಂಡ ತದನಂತರದ ಕುಲಾಧಿಪತಿಗಳು ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ಪದಧಾರಣ ಮಾಡತಕ್ಕದ್ದು.

(5) ಕುಲಾಧಿಪತಿಗಳು ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳ ಅಡಿಯಲ್ಲಿ ಅವರಿಗೆ ಪ್ರದಾನ ಮಾಡಬಹುದಾದಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು, ಅವುಗಳಲ್ಲಿ ಈ ಮುಂದಿನ ಅಧಿಕಾರಗಳು ಒಳಗೊಂಡಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುವುದು;

(ii) ಸಂದರ್ಶಕರ ಮತ್ತು ಸಹ-ಸಂದರ್ಶಕರಿಬ್ಬರ ಗೈರುಹಾಜರಿಯಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಘಟಿಕೋತ್ಸವಗಳಲ್ಲಿ ಅಧ್ಯಕ್ಷತೆಯನ್ನು ವಹಿಸುವುದು;

(iii) ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವುದು;

(iv) ಈ ಅಧಿನಿಯಮ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಅನುಸಾರವಾಗಿ ಕುಲಪತಿಗಳನ್ನು ನೇಮಿಸುವುದು ಅಥವಾ ಪುನರ್ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(v) ಈ ಅಧಿನಿಯಮದ 16ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ನಾಮನಿರ್ದೇಶಕ ಸಮಿತಿಯ ಸದಸ್ಯರಾಗಿ ಒಬ್ಬ ವ್ಯಕ್ತಿಯನ್ನು ನಾಮನಿರ್ದೇಶನ ಮಾಡುವುದು;

(vi) ಸಹಕುಲಪತಿಗಳು, ಡೀನ್, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿಗಳ ನೇಮಕಾತಿಯನ್ನು ಪೂರ್ವಾನುಮೋದಿಸುವುದು;

(vii) ಪ್ರಬಂಧಕ ಮಂಡಳಿಯ ಸದಸ್ಯರನ್ನಾಗಿ ಇಬ್ಬರು ಶಿಕ್ಷಣ ತಜ್ಞರನ್ನು ನಾಮನಿರ್ದೇಶಿಸುವುದು;

(viii) ಮೊದಲ ಸಹಕುಲಪತಿಗಳು ಮತ್ತು ಹಣಕಾಸು ಅಧಿಕಾರಿಗಳನ್ನು ನೇಮಿಸುವುದು;

(ix) ಮೊದಲ ವ್ಯವಸ್ಥಾಪನಾ ಮಂಡಳಿ, ಹಣಕಾಸು ಸಮಿತಿ, ಸಂಶೋಧನಾ ಪರಿಷತ್ತು ಹಾಗೂ ಶೈಕ್ಷಣಿಕ ಪರಿಷತ್ತುಗಳನ್ನು ರಚಿಸುವುದು;

(x) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ ಕಾರ್ಯಸೂಚಿ ವಿಷಯಗಳನ್ನು ಪೂರ್ವಾನುಮೋದಿಸುವುದು;

(xi) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ (ಪ್ರಬಂಧಕ ಮಂಡಳಿಯ ಸಭೆಯಲ್ಲಿ ಉಂಟಾದ ವಿವಾದಗಳನ್ನು ಹೊರತುಪಡಿಸಿ) ವಿವಾದಗಳನ್ನು ಪರಿಹರಿಸುವುದು.

(6) ಪದಾಧಿಕಾರಿ ಅಥವಾ ಸಂಸ್ಥೆ ಮತ್ತು ವಿಶ್ವವಿದ್ಯಾಲಯದ ಯಾವುದೇ ಇತರ ಪದಾಧಿಕಾರಿ ಅಥವಾ ಸಂಸ್ಥೆಯ ನಡುವೆ ವಿವಾದಗಳು ಉಂಟಾದಲ್ಲಿ, ಆ ವಿವಾದವನ್ನು ಕುಲಾಧಿಪತಿಯವರ ಪರ್ಯಾಲೋಚನೆಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿವಾದದ ಸಂದರ್ಭದಲ್ಲಿ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**16. ಕುಲಪತಿಗಳು.**- (1) (2)ನೇ ಉಪಪ್ರಕರಣದ ಉಪಬಂಧಗಳಿಗೆ ಅನುಸಾರವಾಗಿ ನಾಮನಿರ್ದೇಶಕ ಸಮಿತಿಯು ಶಿಫಾರಸ್ಸು ಮಾಡಿದ ಮೂರು ವ್ಯಕ್ತಿಗಳ ಪೈಕಿಯಿಂದ ಒಬ್ಬರನ್ನು ಮೂರು ವರ್ಷಗಳ ಅವಧಿಗಾಗಿ ಕುಲಪತಿಗಳನ್ನಾಗಿ, ಪರಿನಿಯಮಗಳಲ್ಲಿ ನಿಯಮಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರು

ನೇಮಿಸತಕ್ಕದ್ದು. ಮೂರು ವರ್ಷಗಳ ಅವಧಿಯು ಮುಗಿದ ತರುವಾಯ, ಇದನ್ನು ಮೂರು ವರ್ಷಗಳ ಮತ್ತೊಂದು ಅವಧಿಗೆ ನವೀಕರಿಸಬಹುದು:

ಪರಂತು, ಕುಲಪತಿಯವರು, ತಮ್ಮ ಅವಧಿ ಮುಗಿದ ನಂತರವೂ ಹೊಸ ಕುಲಪತಿಯವರು ಸೇರಿಕೊಳ್ಳುವವರೆಗೆ ಪದದಲ್ಲಿ ಮುಂದುವರೆಯತಕ್ಕದ್ದು. ಆದಾಗ್ಯೂ ಈ ಅವಧಿಯು ಯಾವುದೇ ಸಂದರ್ಭದಲ್ಲಿ ಒಂದು ವರ್ಷವನ್ನು ಮೀರತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಹೇಳಿರುವ ನಾಮನಿರ್ದೇಶಕ ಸಮಿತಿಯಲ್ಲಿ ಈ ಮುಂದಿನ ವ್ಯಕ್ತಿಗಳು ಇರತಕ್ಕದ್ದು, ಎಂದರೆ:-

(i) ಕುಲಾಧಿಪತಿಯವರು ನಾಮನಿರ್ದೇಶಿಸಿದ ಒಬ್ಬ ವ್ಯಕ್ತಿ;

(ii) ಪ್ರಬಂಧಕ ಮಂಡಳಿಯ ಇಬ್ಬರು ನಾಮ ನಿರ್ದೇಶಿತರು, ಇವರಲ್ಲಿ ಒಬ್ಬರನ್ನು ಪ್ರಬಂಧಕ ಮಂಡಳಿಯು ಸಮಿತಿಯ ಸಂಚಾಲಕರೆಂದು ನಾಮನಿರ್ದೇಶಿಸತಕ್ಕದ್ದು.

(3) ನಾಮನಿರ್ದೇಶಕ ಸಮಿತಿಯು, ಅರ್ಹತೆಯ ಆಧಾರದ ಮೇಲೆ ಕುಲಪತಿಯ ಹುದ್ದೆಗೆ ಸೂಕ್ತವಾದ ಮೂರು ವ್ಯಕ್ತಿಗಳ ಹೆಸರನ್ನು ಶಿಫಾರಸ್ಸು ಮಾಡತಕ್ಕದ್ದು ಮತ್ತು ಅದನ್ನು ಪ್ರತಿಯೊಬ್ಬ ವ್ಯಕ್ತಿಯ ವಿದ್ಯಾರ್ಹತೆ ಮತ್ತಿತರ ವಿಶಿಷ್ಟ ಪ್ರಶಸ್ತಿಗಳನ್ನು ತಿಳಿಸುವ ಒಂದು ಸಂಕ್ಷಿಪ್ತ ವರದಿಯೊಂದಿಗೆ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು.

(4) ಕುಲಪತಿಯವರು ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಾಹಕ ಮತ್ತು ಶೈಕ್ಷಣಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣವನ್ನು ಚಲಾಯಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯದ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೊಳಿಸತಕ್ಕದ್ದು:

ಪರಂತು, ಶಿಕ್ಷಕರ ನೇಮಕಾತಿಯನ್ನು ಹೊರತುಪಡಿಸಿ ಕೂಡಲೇ ಕ್ರಮವನ್ನು ಕೈಗೊಳ್ಳಬೇಕಾದ ತುರ್ತು ಸ್ವರೂಪದ ಯಾವುದೇ ಇತರ ವಿಷಯಗಳಲ್ಲಿ ಮತ್ತು ಅದನ್ನು ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ವಿಶ್ವವಿದ್ಯಾಲಯವು ಇದಕ್ಕಾಗಿ ಅಧಿಕೃತಗೊಳಿಸಿದ್ದ ಯಾವೊಬ್ಬ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ಇತರ ಸಂಸ್ಥೆಯು ಕೂಡಲೇ ಕ್ರಮಕೈಗೊಳ್ಳುವುದು ಸಾಧ್ಯವಿರದಿರುವಾಗ ಕುಲಪತಿಯವರು ತಾನು ಸೂಕ್ತವೆಂದು ಭಾವಿಸಬಹುದಾದಂತಹ ಕ್ರಮವನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆದು ಕೈಗೊಳ್ಳತಕ್ಕದ್ದು.

(5) ಕುಲಪತಿಯವರು ಪರಿನಿಯಮಗಳು ಅಥವಾ ನಿಯಮಗಳಲ್ಲಿ ಹೇಳಲಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು:

ಪರಂತು, ಕುಲಪತಿಗಳ ಅಭಿಪ್ರಾಯದಲ್ಲಿ, ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಯಾವುದೇ ನಿರ್ಣಯವು, ಈ ಅಧಿನಿಯಮ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳು, ವಿನಿಯಮಗಳು ಅಥವಾ ನಿಯಮಗಳ ಮೂಲಕ ಪ್ರದತ್ತವಾದ ಅಧಿಕಾರದ ಹೊರಗಿದ್ದರೆ ಅಥವಾ ವಿಶ್ವವಿದ್ಯಾಲಯದ ಹಿತಾಸಕ್ತಿಗೆ ಪ್ರತಿಕೂಲವಾಗಬಹುದಾಗಿದ್ದರೆ, ಅದರ ನಿರ್ಣಯದ ದಿನಾಂಕದಿಂದ ಹದಿನೈದು ದಿನಗಳ ಒಳಗೆ ತನ್ನ ನಿರ್ಣಯವನ್ನು ಪರಿಷ್ಕರಿಸಲು ಸಂಬಂಧಪಟ್ಟ ಪ್ರಾಧಿಕಾರವನ್ನು ಆತನು ಕೋರತಕ್ಕದ್ದು ಮತ್ತು ಪ್ರಾಧಿಕಾರವು ಅಂಥ ನಿರ್ಣಯವನ್ನು ಸಂಪೂರ್ಣವಾಗಿ ಅಥವಾ ಭಾಗಶಃವಾಗಿ ಪರಿಷ್ಕರಿಸಲು ನಿರಾಕರಿಸಿದ ಸಂದರ್ಭದಲ್ಲಿ ಅಥವಾ ಹದಿನೈದು ದಿನಗಳೊಳಗೆ ಯಾವುದೇ ನಿರ್ಣಯವನ್ನು ತೆಗೆದುಕೊಳ್ಳಲು ವಿಫಲವಾದಲ್ಲಿ, ನಂತರ ಅಂಥ ವಿಷಯವನ್ನು ಕುಲಾಧಿಪತಿಗಳಿಗೆ ಕಳುಹಿಸತಕ್ಕದ್ದು ಮತ್ತು ಈ ಬಗ್ಗೆ ಇವರ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

(6) ಕುಲಪತಿಯವರ ಸೇವೆಗಳನ್ನು, ಪ್ರಬಂಧಕ ಮಂಡಳಿಯ ಅನುಮೋದನೆಯೊಂದಿಗೆ ಮತ್ತು ಸಹಜ ನ್ಯಾಯದ ತತ್ವಗಳನ್ನು ಅನುಸರಿಸಿದ ನಂತರ ಹಾಗೂ ಶಿಸ್ತಿನ ಆಧಾರದ ಮೇಲೆ ಅಂತ್ಯಗೊಳಿಸುವ ಸಂದರ್ಭವೂ ಸೇರಿದಂತೆ, ಪ್ರಕರಣದ ಬಗ್ಗೆ ಕುಲಪತಿಯು ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡಿದ ತರುವಾಯ, ಕುಲಾಧಿಪತಿಯವರು ಅಂತ್ಯಗೊಳಿಸಬಹುದು.

(7) ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಸಂದರ್ಶಕರು, ಸಹ-ಸಂದರ್ಶಕರು ಮತ್ತು ಕುಲಾಧಿಪತಿಯವರು ಇವರುಗಳ ಗೈರು ಹಾಜರಿಯ ಸಂದರ್ಭದಲ್ಲಿ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**17. ಸಹಕುಲಪತಿಗಳು.**- ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಮೂರು ಜನರನ್ನು ಮೀರದಂತೆ ಸಹಕುಲಪತಿಗಳನ್ನು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**18. ವ್ಯಾಸಂಗ ವಿಭಾಗಗಳ ಡೀನ್‌ಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಪರಿನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವ್ಯಾಸಂಗ ವಿಭಾಗಗಳ ಡೀನ್‌ಗಳನ್ನು ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**19. ಕುಲಸಚಿವರು.–** (1) ಕುಲಾಧಿಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಸಚಿವರನ್ನು ನೇಮಕ ಮಾಡತಕ್ಕದ್ದು.

(2) ಪರಿನಿಯಮಗಳಲ್ಲಿ ಪರಿಭಾಷಿಸಿರುವಂಥ ಎಲ್ಲಾ ಕರಾರುಗಳನ್ನು ವಿಶ್ವವಿದ್ಯಾಲಯದ ಪರವಾಗಿ ಕುಲಸಚಿವರು ಮಾಡಿಕೊಳ್ಳತಕ್ಕದ್ದು ಮತ್ತು ಅದಕ್ಕೆ ಸಹಿ ಹಾಕತಕ್ಕದ್ದು.

(3) ಕುಲಸಚಿವರು ವಿಶ್ವವಿದ್ಯಾಲಯದ ಪರವಾಗಿ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಪರಿನಿಯಮಗಳಿಂದ ಪ್ರದತ್ತಗೊಳಿಸಬಹುದಾದಂಥ ಅಥವಾ ಕುಲಾಧಿಪತಿಯವರು ಮತ್ತು ಕುಲಪತಿಯವರು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು ವಿಶ್ವವಿದ್ಯಾಲಯದ ದಾಖಲೆಗಳು ಮತ್ತು ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು, ಕುಲಪತಿಯವರು ಅಥವಾ ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಅಂಥ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿತಕ್ಕದ್ದು.

**20. ಹಣಕಾಸು ಅಧಿಕಾರಿ.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು, ಪರಿನಿಯಮಗಳ ಮೂಲಕ ಪ್ರದತ್ತಗೊಳಿಸಬಹುದಾದ ಅಂಥ ವಿಧಾನದಲ್ಲಿ ಹಣಕಾಸು ಅಧಿಕಾರಿಯನ್ನು ನೇಮಕ ಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**21. ಇತರ ಅಧಿಕಾರಿಗಳು.–** ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ ನೇಮಕಾತಿಯ ವಿಧಾನ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಕರ್ತವ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ – IV

## ವಿಶ್ವವಿದ್ಯಾಲಯದ ಪ್ರಾಧಿಕಾರಗಳು

**22. ವಿಶ್ವವಿದ್ಯಾಲಯದ ಪ್ರಾಧಿಕಾರಗಳು.–** ಈ ಮುಂದಿನವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:–

(i) ಪ್ರಬಂಧಕ ಮಂಡಳಿ;

(ii) ವ್ಯವಸ್ಥಾಪನ ಮಂಡಳಿ;

(iii) ಶೈಕ್ಷಣಿಕ ಪರಿಷತ್ತು;

(iv) ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು;

(v) ಹಣಕಾಸು ಸಮಿತಿ; ಮತ್ತು

(vi) ವಿಶ್ವವಿದ್ಯಾಲಯದ ಪ್ರಾಧಿಕಾರಗಳೆಂದು ಪರಿನಿಯಮಗಳ ಮೂಲಕ ಘೋಷಿಸಬಹುದಾದ ಅಂಥ ಇತರ ಪ್ರಾಧಿಕಾರಗಳು.

**23. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು.–** (1) ಪ್ರಬಂಧಕ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

| | | | |
|---|---|---|---|
| (i) | ಕುಲಾಧಿಪತಿಯವರು | – | ಅಧ್ಯಕ್ಷರು; |
| (ii) | ಕುಲಪತಿಯವರು | – | ಸದಸ್ಯರು; |

(iii) ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(iv) ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(v) ರಾಜ್ಯ ಸರ್ಕಾರವು ನಾಮ ನಿರ್ದೇಶನ ಮಾಡಿದ ಆಡಳಿತವನ್ನು ಒಳಗೊಂಡಂತೆ ವ್ಯವಸ್ಥಾಪನೆ, ಹಣಕಾಸು ಅಥವಾ ಯಾವುದೇ ಇತರ ವಿಶೇಷ ಕ್ಷೇತ್ರದಲ್ಲಿನ ಒಬ್ಬರು ತಜ್ಞರು;

(vi) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಇಬ್ಬರು ವ್ಯಕ್ತಿಗಳು ಅವರ ಪೈಕಿ ಒಬ್ಬರು ಮಹಿಳೆಯಾಗಿರತಕ್ಕದ್ದು;

(vii) ಸಹ ಕುಲಪತಿಯವರು ಮತದಾನದ ಹಕ್ಕಿಲ್ಲದ ಸದಸ್ಯರಾಗಿರತಕ್ಕದ್ದು;

(viii) ವಿಶ್ವವಿದ್ಯಾಲಯ ಅನುದಾನ ಆಯೋಗದ ನಾಮನಿರ್ದೇಶಿತ ಒಬ್ಬ ಸುಪ್ರಸಿದ್ಧ ಶಿಕ್ಷಣ ತಜ್ಞರು.

(2) ಕುಲಸಚಿವರು ಪ್ರಬಂಧಕ ಮಂಡಳಿಯ ಮತ ದಾನದ ಹಕ್ಕಿರದ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ಪ್ರಬಂಧಕ ಮಂಡಳಿಯ ಸದಸ್ಯರ ಪದಾವಧಿ, ಸರ್ಕಾರದಿಂದ ನಾಮನಿರ್ದೇಶಿತರಾದ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ನೇಮಕಾತಿ, ನವೀಕರಣ ಮತ್ತು ತೆಗೆದುಹಾಕುವುದು ಮುಂತಾದವುಗಳು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಾಧಿಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರ ಗೈರುಹಾಜರಿಯಲ್ಲಿ ಕುಲಾಧಿಪತಿಯವರಿಂದ ನಾಮನಿರ್ದೇಶಿತರಾದ ಯಾರಾದರೂ ಒಬ್ಬರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು. ಅಂಥ ಸಭೆಯ ಅಧ್ಯಕ್ಷತೆಯನ್ನು ವಹಿಸುವುದಕ್ಕೆ ಕುಲಾಧಿಪತಿಯವರು ಯಾವೊಬ್ಬ ವ್ಯಕ್ತಿಯನ್ನೂ ನಾಮನಿರ್ದೇಶನ ಮಾಡಿರದಿದ್ದಲ್ಲಿ, ಸಭೆಯಲ್ಲಿ ಹಾಜರಿರುವ ಸದಸ್ಯರು ಸರಳ ಬಹುಮತದ ಮೂಲಕ ಅವರುಗಳ ಪೈಕಿಯಿಂದಲೇ ಆ ಸಭೆಗೆ ಮಾತ್ರವೇ ಅಧ್ಯಕ್ಷನನ್ನು ಚುನಾಯಿಸತಕ್ಕದ್ದು.

(5) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಿಗೆ, ಅಂಥ ಸಭೆಯಲ್ಲಿ ಹಾಜರಾಗುವ ಮತ್ತು ಮತದಾನ ನೀಡುವ ಮೂರು ಜನ ಸದಸ್ಯರು ಗಣಪೂರ್ತಿ (ಕೋರಂ) ಆಗಿರತಕ್ಕದ್ದು:

ಪರಂತು, ಪ್ರಬಂಧಕ ಮಂಡಳಿಯ ಯಾವುದೇ ಸಭೆಯ ಕೋರಂ ಪೂರ್ಣವಾಗಬೇಕಾದರೆ ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಿರುವುದು ಮತ್ತು ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ನಾಮನಿರ್ದೇಶಿತರು ಹಾಜರಾಗದೇ ಇದ್ದಾಗ ಕುಲಪತಿಯವರು ಹಾಜರಿರುವುದು ಯಾವಾಗಲೂ ಅವಶ್ಯವಾಗಿರತಕ್ಕದ್ದು.

(6) ಪ್ರಬಂಧಕ ಮಂಡಳಿಯು ವಿಶ್ವವಿದ್ಯಾಲಯದ ಪ್ರಧಾನ ಪ್ರಬಂಧಕ ಸಂಸ್ಥೆಯಾಗಿರತಕ್ಕದ್ದು ಮತ್ತು ಅದು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಕಗೊಳಿಸುವುದು;

(ii) ವಿಶ್ವವಿದ್ಯಾಲಯವು ಅನುಸರಿಸಬೇಕಾದ ಕಾರ್ಯನೀತಿಗಳನ್ನು ರಚಿಸುವುದು;

(iii) ಈ ಅಧಿನಿಯಮದ ಅಥವಾ ಪರಿನಿಯಮಗಳ ಅಥವಾ ನಿಯಮಗಳ ಉಪಬಂಧಗಳಿಗೆ ಅನುಗುಣವಾಗಿ ಇರದ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ತೀರ್ಮಾನಗಳನ್ನು ಪುನರೀಕ್ಷಿಸುವುದು;

(iv) ವಿಶ್ವವಿದ್ಯಾಲಯದ ಆಯವ್ಯಯ ಮತ್ತು ವಾರ್ಷಿಕ ವರದಿಗಳನ್ನು ಅನುಮೋದಿಸುವುದು;

(v) ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸುವುದು ಅಥವಾ ಈಗಾಗಲೇ ಇರುವ ಪರಿನಿಯಮಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವುದು ಅಥವಾ ನಿರಸನಗೊಳಿಸುವುದು;

(vi) ವಿಶ್ವವಿದ್ಯಾಲಯವನ್ನು ಸ್ವಯಂಸಮಾಪನಗೊಳಿಸುವ ನಿರ್ಧಾರವನ್ನು ತೆಗೆದುಕೊಳ್ಳುವುದು;

(vii) ಸರ್ಕಾರಕ್ಕೆ ಸಲ್ಲಿಸುವ ಪ್ರಸ್ತಾವಗಳನ್ನು ಅನುಮೋದಿಸುವುದು;

(viii) ಶುಲ್ಕ ನಿಯಂತ್ರಣ ಸಮಿತಿಗೆ ಮೂವರು ಸದಸ್ಯರನ್ನು ನಾಮನಿರ್ದೇಶನ ಮಾಡುವುದು;

(ix) ವಿಶ್ವವಿದ್ಯಾಲಯದ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕೆ ಅಪೇಕ್ಷಣೀಯವೆಂದು ಕಂಡುಬರುವಂಥ ತೀರ್ಮಾನಗಳನ್ನು ಮತ್ತು ಕ್ರಮಗಳನ್ನು ಕೈಗೊಳ್ಳುವುದು.

(7) ಪ್ರಬಂಧಕ ಮಂಡಳಿಯು ಒಂದು ವರ್ಷದಲ್ಲಿ ಕನಿಷ್ಠ ಮೂರು ಸಲ ಸಭೆ ಸೇರತಕ್ಕದ್ದು.

(8) ಪ್ರಬಂಧಕ ಮಂಡಳಿಯು ಶಾಸನದ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ಅವಧಿಯಲ್ಲಿ ಮತ್ತು ಸ್ಥಳದಲ್ಲಿ ಸಭೆ ಸೇರತಕ್ಕದ್ದು.

**24. ವ್ಯವಸ್ಥಾಪನಾ ಮಂಡಳಿ.**– (1) ವ್ಯವಸ್ಥಾಪನಾ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಗಳು;

(ii) ಸಹಕುಲಪತಿಗಳು;

(iii) ಕುಲಸಚಿವರು;

(iv) ಪ್ರಾಯೋಜಕ ಸಂಸ್ಥೆಯ ಇಬ್ಬರು ನಾಮನಿರ್ದೇಶಿತರು;

(v) ಕುಲಪತಿಗಳು ನಾಮನಿರ್ದೇಶಿಸಬಹುದಾದ ವಿದ್ಯಾಲಯಗಳ ಇಬ್ಬರು ಡೀನ್‌ಗಳು;

(2) ಕುಲಪತಿಯವರು ವ್ಯವಸ್ಥಾಪನಾ ಮಂಡಳಿಯ ಅಧ್ಯಕ್ಷರಾಗಿರತಕ್ಕದ್ದು ಮತ್ತು ಕುಲಸಚಿವರು ವ್ಯವಸ್ಥಾಪನಾ ಮಂಡಳಿಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ವ್ಯವಸ್ಥಾಪನಾ ಮಂಡಳಿಯು ವಿಶ್ವವಿದ್ಯಾಲಯದ ಕಾರ್ಯನಿರ್ವಾಹಕ ಸಂಸ್ಥೆಯಾಗಿರತಕ್ಕದ್ದು. ವ್ಯವಸ್ಥಾಪನಾ ಮಂಡಳಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ವ್ಯವಸ್ಥಾಪನಾ ಮಂಡಳಿಯ ಎಲ್ಲಾ ಸಭೆಗಳಲ್ಲಿ ಯಾವಾಗಲೂ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು ಹಾಗೂ ಕುಲಪತಿಯವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೇ ಇದ್ದ ಸಂದರ್ಭದಲ್ಲಿ ಸಭೆಯಲ್ಲಿ ಹಾಜರಿರುವ ಸದಸ್ಯರು ಚುನಾಯಿಸಿದ ಯಾವುದೇ ಇತರ ಸದಸ್ಯರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ವ್ಯವಸ್ಥಾಪನಾ ಮಂಡಳಿಯ ಸಭೆಯಲ್ಲಿ ಯಾವುದೇ ವಿಷಯವನ್ನು ಕುರಿತು ವಿವಾದ ಉಂಟಾದಲ್ಲಿ ಸದರಿ ವಿಷಯವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯದ ಬಗ್ಗೆ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**25. ಶೈಕ್ಷಣಿಕ ಪರಿಷತ್ತು.**–(1) ಶೈಕ್ಷಣಿಕ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಕಾರ್ಯದರ್ಶಿಗಳು

(iv) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಶೈಕ್ಷಣಿಕ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಶೈಕ್ಷಣಿಕ ಸಂಸ್ಥೆಯಾಗಿರತಕ್ಕದ್ದು ಮತ್ತು ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಹಾಗೂ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**26. ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು.**– (1) ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಸಂಶೋಧನೆ ಮತ್ತು ಅನ್ವೇಷಣಾ ಸಮಿತಿಯಾಗಿರತಕ್ಕದ್ದು ಹಾಗೂ ಸಂಶೋಧನೆ ಮತ್ತು ಅನ್ವೇಷಣಾ ಕ್ಷೇತ್ರಗಳ ಆದ್ಯತೆಯೂ ಒಳಗೊಂಡಂತೆ, ವಿಶ್ವವಿದ್ಯಾಲಯವು ಕೈಗೊಳ್ಳಬೇಕಾದ ಸಂಶೋಧನೆ ಮತ್ತು ಅನ್ವೇಷಣೆಯ ಬಗ್ಗೆ ಒಂದು ವ್ಯಾಪಕವಾದ ಪರಿಪೂರ್ಣ ಭವಿಷ್ಯದ್ ದೃಷ್ಟಿಯನ್ನು ಒದಗಿಸತಕ್ಕದ್ದು. ಈ ಪರಿಷತ್ತು, ಈ

ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಮತ್ತು ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಸಂಶೋಧನೆ ಮತ್ತು ಅನ್ವೇಷಣಾ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಸಂಶೋಧನೆಯ ಡೀನ್ – ಕಾರ್ಯದರ್ಶಿ

(iv) ಅನ್ವೇಷಣಾ ವಿಭಾಗದ ಮುಖ್ಯಸ್ಥರು – ಸದಸ್ಯರು

(v) ಎಲ್ಲಾ ವ್ಯಾಸಂಗ ವಿಭಾಗಗಳ ಡೀನ್‌ಗಳು – ಸದಸ್ಯರು ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

**27. ಹಣಕಾಸು ಸಮಿತಿ.–** (1) ಹಣಕಾಸು ಸಮಿತಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಾಧಿಪತಿಯವರು ಅಥವಾ ಅವರ ನಾಮನಿರ್ದೇಶಿತರು – ಅಧ್ಯಕ್ಷರು

(ii) ಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಸದಸ್ಯರು

(iv) ಹಣಕಾಸು ಅಧಿಕಾರಿ – ಕಾರ್ಯದರ್ಶಿ

(v) ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು – ಸದಸ್ಯರು; ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಹಣಕಾಸು ಸಮಿತಿಯು ಹಣಕಾಸಿನ ವಿಷಯಗಳನ್ನು ಕೈಗೊಳ್ಳುವ ವಿಶ್ವವಿದ್ಯಾಲಯದ ಪ್ರಧಾನ ಹಣಕಾಸು ಸಂಸ್ಥೆಯಾಗಿರತಕ್ಕದ್ದು ಹಾಗೂ ಅದು ಈ ಅಧಿನಿಯಮ, ನಿಯಮಗಳು ಮತ್ತು ಪರಿನಿಯಮಗಳ ಉಪಬಂಧಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಹಣಕಾಸು ವಿಷಯಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**28. ಇತರ ಪ್ರಾಧಿಕಾರಗಳು.–** ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ರಚನೆ, ಅಧಿಕಾರಗಳು ಹಾಗೂ ಪ್ರಕಾರ್ಯಗಳು ಪರಿನಿಯಮಗಳಿಂದ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

**29. ಒಂದು ಪ್ರಾಧಿಕಾರದ ಅಥವಾ ಸಂಸ್ಥೆಯ ಸದಸ್ಯತ್ವಕ್ಕೆ ಅನರ್ಹತೆ.–** ವಿಶ್ವವಿದ್ಯಾಲಯದ ಸಂಸ್ಥೆಗಳ ಯಾವುವೇ ಪ್ರಾಧಿಕಾರಗಳ ಒಬ್ಬ ವ್ಯಕ್ತಿಯು,-

(ಎ) ಅಸ್ವಸ್ಥ ಚಿತ್ತನಾಗಿದ್ದು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿಸಲ್ಪಟ್ಟಿದ್ದರೆ;

(ಬಿ) ಅವಿಮುಕ್ತ ದಿವಾಳಿಯಾಗಿದ್ದರೆ;

(ಸಿ) ನೈತಿಕ ಅಧ:ಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದರೆ;

(ಡಿ) ಖಾಸಗಿ ಬೋಧನಾ ತರಗತಿಗಳನ್ನು ನಡೆಸುತ್ತಿದ್ದರೆ ಅಥವಾ ಸ್ವತ: ನಿರತನಾಗಿದ್ದರೆ;

(ಇ) ಯಾವುದೇ ವಿಧದಲ್ಲಿ, ಎಲ್ಲಿಯೇ, ಯಾವುದೇ ಪರೀಕ್ಷೆಯನ್ನು ನಡೆಸುವಲ್ಲಿ ಅನುಚಿತ ಅಭ್ಯಾಸದಲ್ಲಿ ತೊಡಗಿದ್ದಕ್ಕಾಗಿ ಅಥವಾ ಉತ್ತೇಜಿಸಿದ್ದಕ್ಕಾಗಿ ದಂಡಿತನಾಗಿದ್ದರೆ;

(ಎಫ್) ಪ್ರಾಯೋಜಿತ ಸಂಸ್ಥೆಯು ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಯಾವೊಬ್ಬ ಸದಸ್ಯನನ್ನು ಆ ಪದವನ್ನು ಹೊಂದಿರುವುದಕ್ಕೆ ಅರ್ಹನಲ್ಲನೆಂದು ಲಿಖಿತದಲ್ಲಿ ಅಭಿಪ್ರಾಯ ನೀಡಿದಾಗಲೆಲ್ಲಾ,

-ಸದಸ್ಯನಾಗಿರುವುದಕ್ಕೆ ಅನರ್ಹನಾಗತಕ್ಕದ್ದು.

**30. ಖಾಲಿಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ.**- ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಕಾರ್ಯ ಅಥವಾ ವ್ಯವಹರಣೆಗಳು ಕೇವಲ ಅದರಲ್ಲಿ ಯಾವುದೇ ಖಾಲಿಸ್ಥಾನ ಇದೆ ಎಂಬ ಕಾರಣದಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣದಿಂದ ಮಾತ್ರವೇ ಅಸಿಂಧುವಾಗತಕ್ಕದ್ದಲ್ಲ.

**31. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು.**- (1) ಯಾವುವೇ ಕಾರ್ಯಸೂಚಿ ವಿಷಯಗಳನ್ನು ಕುಲಾಧಿಪತಿಯವರ ಪೂರ್ವಾನುಮೋದನೆಯನ್ನು ಪಡೆಯದೇ ಪ್ರಬಂಧಕ ಮಂಡಳಿಯ ಅಥವಾ ವ್ಯವಸ್ಥಾಪನಾ ಮಂಡಳಿಯ ಅಥವಾ ಯಾವುದೇ ಸಮಿತಿಯ ಸಭೆಗಳ ಕಾರ್ಯಸೂಚಿ ವಿಷಯಗಳಲ್ಲಿ ಸೇರಿಸತಕ್ಕದ್ದಲ್ಲ ಅಥವಾ ಚರ್ಚೆಗೆ ತೆಗೆದುಕೊಳ್ಳತಕ್ಕದ್ದಲ್ಲ ಮತ್ತು ತೀರ್ಮಾನಿಸತಕ್ಕದ್ದಲ್ಲ.

(2) ಈ ಅಧಿನಿಯಮದ ಯಾವುದೇ ಉಪಬಂಧಗಳನ್ನು ಪಾಲಿಸದೆ ಇರುವ ಸಂದರ್ಭದಲ್ಲಿ, ಕುಲಾಧಿಪತಿಯವರು ವಿಶ್ವವಿದ್ಯಾಲಯದ ಯಾವುದೇ ಪದಾಧಿಕಾರಿ ಅಥವಾ ಸಂಸ್ಥೆಯು ತೆಗೆದುಕೊಂಡ ಎಲ್ಲಾ ತೀರ್ಮಾನಗಳನ್ನು ವಿಪರ್ಯಯಗೊಳಿಸುವ ಮೂಲಕ ಪರಿಹಾರ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಅಧಿಕಾರವನ್ನು ಎಲ್ಲಾ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಅಂಥ ಪರಿಹಾರ ಕ್ರಮದ ಪರಿಣಾಮವಾಗಿ ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ವಿಶ್ವವಿದ್ಯಾಲಯದ ಪದಾಧಿಕಾರಿ ಅಥವಾ ಸಂಸ್ಥೆಯು ಕೈಗೊಂಡಿದ್ದ ಎಲ್ಲಾ ಅಂಥ ಕ್ರಮಗಳು, ಮೊದಲಿನಿಂದಲೂ ಶೂನ್ಯ ಮತ್ತು ಅಕೃತ ಎಂದು ಭಾವಿಸತಕ್ಕದ್ದು ಹಾಗೂ ತತ್ಪರಿಣಾಮವಾಗಿ, ಉಪಬಂಧ ಪಾಲಿಸದೇ ಇದ್ದ ವಿಷಯ ಅಥವಾ ನಿರ್ಧಾರದ ಸಂಬಂಧದಲ್ಲಿ ಅದಕ್ಕೆ ಮುಂಚೆ ಇದ್ದ ವಸ್ತುಸ್ಥಿತಿಯೇ ಮುಂದುವರಿಯತಕ್ಕದ್ದು.

## ಅಧ್ಯಾಯ - V

## ಪರಿನಿಯಮಗಳು ಮತ್ತು ವಿನಿಯಮಗಳು

**32. ಪರಿನಿಯಮಗಳು.**- ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಪರಿನಿಯಮಗಳು ವಿಶ್ವವಿದ್ಯಾಲಯಕ್ಕೆ ಮತ್ತು ಸಿಬ್ಬಂದಿಗೆ ಸಂಬಂಧಿಸಿದ ಎಲ್ಲಾ ಅಥವಾ ಯಾವುದೇ ವಿಷಯಕ್ಕೆ ಈ ಕೆಳಗಿನಂತೆ ಉಪಬಂಧ ಕಲ್ಪಿಸಬಹುದು, ಎಂದರೆ:-

(i) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಕಾರ್ಯಕಲಾಪಗಳನ್ನು ನಡೆಸುವ ಮತ್ತು ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸದಿರುವ ಸಂಸ್ಥೆಗಳ ರಚನೆಯ ಕಾರ್ಯವಿಧಾನ;

(ii) ಶಾಶ್ವತ ಶಾಸನಬದ್ಧ ದತ್ತಿ ನಿಧಿ, ವಿಶ್ವವಿದ್ಯಾಲಯ ದತ್ತಿ ನಿಧಿ, ಸಾಮಾನ್ಯ ನಿಧಿ ಹಾಗೂ ಅಭಿವೃದ್ಧಿ ನಿಧಿಗಳ ನಿರ್ವಹಣೆ;

(iii) ಕುಲಪತಿಗಳು, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರ ನೇಮಕಾತಿಯ ನಿಬಂಧನೆಗಳು ಹಾಗೂ ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಪ್ರಕಾರ್ಯಗಳು;

(iv) ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ, ಅಧ್ಯಾಪಕರ ಮತ್ತು ನೌಕರರ ನೇಮಕಾತಿ ವಿಧಾನ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(v) ವಿಶ್ವವಿದ್ಯಾಲಯ ಹಾಗೂ ಅದರ ಅಧಿಕಾರಿಗಳು, ವ್ಯಾಸಂಗ ವಿಭಾಗದ (ಫ್ಯಾಕಲ್ಟಿ) ಸದಸ್ಯರು, ನೌಕರರು ಹಾಗೂ ವಿದ್ಯಾರ್ಥಿಗಳ ನಡುವೆ ಉಂಟಾದ ವಿವಾದಗಳನ್ನು ಪರಿಹರಿಸುವ ಕಾರ್ಯವಿಧಾನ;

(vi) ವಿಭಾಗಗಳು ಮತ್ತು ವ್ಯಾಸಂಗ ವಿಭಾಗಗಳ (ಫ್ಯಾಕಲ್ಟಿಗಳ) ಸೃಜನೆ, ರದ್ಧತಿ ಅಥವಾ ಪುನಾರಚನೆ;

(vii) ಇತರ ವಿಶ್ವವಿದ್ಯಾಲಯಗಳು ಅಥವಾ ಉನ್ನತ ಕಲಿಕಾ ಸಂಸ್ಥೆಗಳ ಜೊತೆಯಲ್ಲಿ ಸಹಕರಿಸಬೇಕಾದ ರೀತಿ;

(viii) ಗೌರವ ಪದವಿಗಳ ನೀಡಿಕೆಯ ಕಾರ್ಯವಿಧಾನ;

(ix) ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿವೇತನ ಮಂಜೂರಾತಿಗೆ ಸಂಬಂಧಿಸಿದ ಉಪಬಂಧಗಳು;

(x) ವಿವಿಧ ವ್ಯಾಸಂಗ ಕ್ರಮಗಳಲ್ಲಿನ ಸೀಟುಗಳ ಸಂಖ್ಯೆಗೆ ಸಂಬಂಧಿಸಿದ ಕಾರ್ಯನೀತಿಗಳು ಮತ್ತು ಅಂಥ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಕಾರ್ಯವಿಧಾನ;

(xi) ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಶುಲ್ಕಕ್ಕೆ ಸಂಬಂಧಿಸಿದ ಕಾರ್ಯನೀತಿ;

(xii) ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಉಚಿತ ಶಿಕ್ಷಣ, ಪದಕಗಳು ಹಾಗೂ ಬಹುಮಾನಗಳನ್ನು ಪ್ರಾರಂಭಿಸುವುದು;

(xiii) ಪ್ರಬಂಧಕ ಮಂಡಳಿಯು ನಿರ್ಧರಿಸಬಹುದಾದ ಅಥವಾ ಈ ಅಧಿನಿಯಮದ ಅಡಿಯಲ್ಲಿ ಪರಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬೇಕಾದ ಅಗತ್ಯತೆಯುಳ್ಳ ಯಾವುದೇ ಇತರ ವಿಷಯಗಳು.

33. **ಪರಿನಿಯಮಗಳ ರಚನೆ ವಿಧಾನ.**- (1) ವ್ಯವಸ್ಥಾಪನಾ ಮಂಡಳಿಯು ರಚಿಸಿದ ಮೊದಲ ಶಾಸನಗಳನ್ನು ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ವ್ಯವಸ್ಥಾಪನಾ ಮಂಡಳಿಯು ಸಲ್ಲಿಸಿದ ಮೊದಲ ಪರಿನಿಯಮಗಳನ್ನು ಪ್ರಬಂಧಕ ಮಂಡಳಿಯು ಪರಿಗಣಿಸತಕ್ಕದ್ದು ಹಾಗೂ ತಾನು ಅವಶ್ಯವೆಂದು ಭಾವಿಸಬಹುದಾದ ಅಂಥ ಮಾರ್ಪಾಡುಗಳು, ಯಾವುದಾದರು ಇದ್ದಲ್ಲಿ, ಅವುಗಳೊಡನೆ ತನ್ನ ಅನುಮೋದನೆಯನ್ನು ನೀಡತಕ್ಕದ್ದು.

(3) ವಿಶ್ವವಿದ್ಯಾಲಯವು, ಪ್ರಬಂಧಕ ಮಂಡಳಿಯು ಅನುಮೋದಿಸಿದ ಮೊದಲ ಪರಿನಿಯಮಗಳನ್ನು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ಪ್ರಕಟಿಸತಕ್ಕದ್ದು ಮತ್ತು ತದನಂತರ ಮೊದಲ ಪರಿನಿಯಮಗಳ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

34. **ಪರಿನಿಯಮಗಳ ತಿದ್ದುಪಡಿಯ ಅಧಿಕಾರ.**- ಪ್ರಬಂಧಕ ಮಂಡಳಿಯು ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸಬಹುದು ಅಥವಾ ಪರಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ಅವನ್ನು ನಿರಸನಗೊಳಿಸಬಹುದು.

35. **ವಿನಿಯಮಗಳು.**- ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ವಿನಿಯಮಗಳು ಈ ಮುಂದಿನ ವಿಷಯಗಳಿಗೆ ಉಪಬಂಧಗಳನ್ನು ಕಲ್ಪಿಸಬಹುದು, ಎಂದರೆ:-

(i) ವಿಶ್ವವಿದ್ಯಾಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ವಿದ್ಯಾರ್ಥಿ ಪಟ್ಟಿಯಲ್ಲಿ ಅವರುಗಳ ದಾಖಲಾತಿ ಹಾಗೂ ಮುಂದುವರಿಕೆ;

(ii) ವಿಶ್ವವಿದ್ಯಾಲಯದ ಎಲ್ಲಾ ಪದವಿಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ನಿಗದಿಪಡಿಸತಕ್ಕ ವ್ಯಾಸಂಗ ಕ್ರಮಗಳು;

(iii) ಪದವಿಗಳ ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರದಾನ;

(iv) ಸಂಶೋಧನಾ ವೇತನಗಳು (ಫೆಲೋಶಿಪ್), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಪದಕಗಳು ಮತ್ತು ಬಹುಮಾನಗಳನ್ನು ನೀಡಲು ಷರತ್ತುಗಳು;

(v) ಪರೀಕ್ಷೆಗಳನ್ನು ನಡೆಸುವುದು ಹಾಗೂ ಪರೀಕ್ಷೆ ನಡೆಸುವ ಸಂಸ್ಥೆಗಳು, ಪರೀಕ್ಷಕರು, ಪರೀಕ್ಷಾ ಮೇಲ್ವಿಚಾರಕರು, ಟ್ಯಾಬುಲೇಟರ್‌ಗಳು ಮತ್ತು ಮಾಡರೇಟರ್‌ಗಳ ನೇಮಕಾತಿ ಷರತ್ತುಗಳು ಮತ್ತು ವಿಧಾನ ಹಾಗೂ ಅವರ ಕರ್ತವ್ಯಗಳು;

(vi) ವಿಶ್ವವಿದ್ಯಾಲಯದ ಪರೀಕ್ಷೆಗಳಿಗೆ, ಪದವಿಗಳಿಗೆ ಹಾಗೂ ಇತರ ಶೈಕ್ಷಣಿಕ ಪ್ರಶಸ್ತಿಗಳಿಗೆ ಪ್ರವೇಶಕ್ಕೆ ವಿಧಿಸತಕ್ಕ ಶುಲ್ಕ;

(vii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನಲ್ಲಿ ವಿದ್ಯಾರ್ಥಿಗಳ ನಿವಾಸಕ್ಕಾಗಿ ಷರತ್ತುಗಳು;

(viii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಶಿಸ್ತು ಪಾಲನೆ;

(ix) ಈ ಅಧಿನಿಯಮದ ಅಡಿಯಲ್ಲಿನ ಪರಿನಿಯಮಗಳಲ್ಲಿ ಉಪಬಂಧ ಕಲ್ಪಿಸಬಹುದಾಂಥ ಇತರ ಎಲ್ಲಾ ವಿಷಯಗಳು.

36. **ವಿನಿಯಮಗಳ ರಚನೆ ವಿಧಾನ.**- ವಿನಿಯಮಗಳನ್ನು ಶೈಕ್ಷಣಿಕ ಪರಿಷತ್ತು ರಚಿಸತಕ್ಕದ್ದು ಹಾಗೂ ವ್ಯವಸ್ಥಾಪನಾ ಮಂಡಳಿಯು ಅನುಮೋದಿಸತಕ್ಕದ್ದು.

**37. ವಿನಿಯಮಗಳ ತಿದ್ದುಪಡಿಗೆ ಅಧಿಕಾರ.–** ವ್ಯವಸ್ಥಾಪನಾ ಮಂಡಳಿಯ ಅನುಮೋದನೆಯೊಡನೆ ಶೈಕ್ಷಣಿಕ ಪರಿಷತ್ತು ಹೊಸ ವಿನಿಯಮಗಳನ್ನು ಅಥವಾ ಹೆಚ್ಚುವರಿ ವಿನಿಯಮಗಳನ್ನು ರಚಿಸಬಹುದು ಅಥವಾ ವಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ನಿರಸನಗೊಳಿಸಬಹುದು.

**38. ಶುಲ್ಕ ನಿಯಂತ್ರಣ ಸಮಿತಿ.–** (1) ಸರ್ಕಾರವು ರಚಿಸಿದ ನಿವೃತ್ತ ಸರ್ವೋಚ್ಚ ನ್ಯಾಯಾಲಯದ ಅಥವಾ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು ಮುಖ್ಯಸ್ಥರಾಗಿರುವ ಮತ್ತು ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ, ಉನ್ನತ ಶಿಕ್ಷಣ ಪ್ರಭಾರದಲ್ಲಿರುವ ಸರ್ಕಾರದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು ವೈದ್ಯಕೀಯ ಶಿಕ್ಷಣದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು ಒಬ್ಬ ಮಹಿಳೆಯೂ ಸೇರಿದಂತೆ ಪ್ರಬಂಧಕ ಮಂಡಳಿಯು ನಾಮನಿರ್ದೇಶಿಸಿದ ಇಬ್ಬರು ಶಿಕ್ಷಣ ತಜ್ಞರು ಇವರುಗಳನ್ನು ಒಳಗೊಂಡ ಒಂದು ಶುಲ್ಕ ನಿಯಂತ್ರಣ ಸಮಿತಿಯು, 9ನೇ ಪ್ರಕರಣದ ಅಡಿಯಲ್ಲಿ ಕರ್ನಾಟಕದ ವಿದ್ಯಾರ್ಥಿಗಳಿಗಾಗಿ ಮೀಸಲಿರಿಸಿದ ವಿಶ್ವವಿದ್ಯಾಲಯದ ಸ್ಥಾನಗಳ ಶುಲ್ಕವನ್ನು ನಿಯಂತ್ರಿಸತಕ್ಕದ್ದು. ಸಮಿತಿಯಲ್ಲಿ ಈ ಉದ್ದೇಶಕ್ಕಾಗಿ ಒಬ್ಬರು ಖ್ಯಾತ ಚಾರ್ಟರ್ಡ್ ಅಕೌಂಟೆಂಟ್ ರವರನ್ನು ಸಹ ಸದಸ್ಯನನ್ನಾಗಿ ಸೇರಿಸಿಕೊಳ್ಳತಕ್ಕದ್ದು.

(2) ಸಮಿತಿಯು ವಿಶ್ವವಿದ್ಯಾಲಯದ ಪ್ರವೇಶಗಳ ಮತ್ತು ಶುಲ್ಕದ ಸಂಗ್ರಹಣೆಯ ಅನುಪಾಲನೆಯನ್ನು ನೋಡಿಕೊಳ್ಳತಕ್ಕದ್ದು.

## ಅಧ್ಯಾಯ – VI

### ಸಂಕೀರ್ಣ

**39. ನೌಕರರ ಸೇವಾ ಷರತ್ತುಗಳು.–** (1) ಪರಿನಿಯಮಗಳ ಮತ್ತು ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಥವಾ ನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳು, ಯಾವುದಾದರೂ ಇದ್ದಲ್ಲಿ, ಅವುಗಳಿಗೆ ಒಳಪಟ್ಟು ಪ್ರತಿಯೊಬ್ಬ ನೌಕರನು ಲಿಖಿತ ಕರಾರಿನ ಅಡಿಯಲ್ಲಿ ನೇಮಕಗೊಳ್ಳತಕ್ಕದ್ದು ಮತ್ತು ಅದನ್ನು ವಿಶ್ವವಿದ್ಯಾಲಯದಲ್ಲಿ ಇಟ್ಟುಕೊಳ್ಳತಕ್ಕದ್ದು ಹಾಗೂ ಅದರ ಪ್ರತಿಯನ್ನು ಸಂಬಂಧಪಟ್ಟ ನೌಕರನಿಗೆ ನೀಡತಕ್ಕದ್ದು.

(2) ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಕಾರ್ಯವಿಧಾನಗಳ ಮೂಲಕ ನಿಯಂತ್ರಿಸತಕ್ಕದ್ದು.

(3) ಕರಾರಿನಿಂದಾಗಿ ವಿಶ್ವವಿದ್ಯಾಲಯ ಮತ್ತು ನೌಕರನ ಮಧ್ಯದಲ್ಲಿ ಉದ್ಭವಿಸಬಹುದಾದ ಯಾವುದೇ ವಿವಾದವನ್ನು, ಲಿಖಿತ ಕರಾರಿನಲ್ಲಿ ಉಪಬಂಧಿಸಿದ ವಿಧಾನದಲ್ಲಿ ಹಾಗೂ ಪರಿನಿಯಮಗಳ ಅನುಸಾರವಾಗಿ ಪರಿಹರಿಸತಕ್ಕದ್ದು.

**40. ಮೇಲ್ಮನವಿ ಹಕ್ಕು.–** ವಿಶ್ವವಿದ್ಯಾಲಯವು ತನ್ನ ನೌಕರರ ಅಥವಾ ವಿದ್ಯಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡ ಸಂದರ್ಭದಲ್ಲಿ, ಬಾಧಿತ ನೌಕರ ಅಥವಾ ವಿದ್ಯಾರ್ಥಿಗಳು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಮೇಲ್ಮನವಿ ಹಕ್ಕನ್ನು ಹೊಂದಿರತಕ್ಕದ್ದು.

**41. ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿ .–** ವಿಶ್ವವಿದ್ಯಾಲಯವು, ತನ್ನ ನೌಕರರ ಪ್ರಯೋಜನಕ್ಕಾಗಿ, ಪರಿನಿಯಮಗಳು ಮತ್ತು ಜಾರಿಯಲ್ಲಿರುವ ಕಾನೂನುಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿಯನ್ನು ರಚಿಸತಕ್ಕದ್ದು ಹಾಗೂ ಅಂಥ ವಿಮಾ ಯೋಜನೆಗಳನ್ನು ಒದಗಿಸತಕ್ಕದ್ದು.

**42. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಇತರ ಸಂಸ್ಥೆಯ ಸದಸ್ಯನಾಗಿ ಯಾವೊಬ್ಬ ವ್ಯಕ್ತಿಯು ಸೂಕ್ತವಾಗಿ ಆಯ್ಕೆಯಾಗಿದ್ದಾನೆಯೇ ಅಥವಾ ನೇಮಕಗೊಂಡಿದ್ದಾನೆಯೇ ಅಥವಾ ಅದಕ್ಕೆ ಅರ್ಹನಾಗಿದ್ದಾನೆಯೇ ಎಂಬ ಯಾವುದೇ ಪ್ರಶ್ನೆ ಉದ್ಭವಿಸಿದರೆ, ಆ ವಿಷಯವನ್ನು ತೀರ್ಮಾನಕ್ಕಾಗಿ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**43. ಸಮಿತಿಗಳ ರಚನೆ.–** 22ನೇ ಪ್ರಕರಣದಲ್ಲಿ ನಮೂದಿಸಿದ ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಅಧಿಕಾರವನ್ನು ಹೊಂದಿರುವ ಅಂಥ ಸದಸ್ಯರನ್ನು ಒಳಗೊಂಡ ಅಂಥ ಪ್ರಾಧಿಕಾರದ ಒಂದು ಸಮಿತಿಯನ್ನು ರಚಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**44. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಂಸ್ಥೆಯ ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ಪೈಕಿ ಯಾವುದೇ ಸ್ಥಾನವು ಆಕಸ್ಮಿಕವಾಗಿ ಖಾಲಿಯಾದರೆ, ಯಾರ ಸ್ಥಾನವು ಖಾಲಿಯಾಗಿ ತುಂಬಬೇಕಾಗಿ ಬಂದಿದೆಯೋ ಆ ಸದಸ್ಯನನ್ನು ಯಾವ ರೀತಿಯಲ್ಲಿ ಆರಿಸಲಾಗಿತ್ತೋ ಅದೇ ರೀತಿಯಲ್ಲಿ ಹೊಸ ಸದಸ್ಯನನ್ನು ಆರಿಸಿ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ಖಾಲಿ ಸ್ಥಾನವನ್ನು ಭರ್ತಿ ಮಾಡಿದ ವ್ಯಕ್ತಿಯು ಆತನು ಯಾವ ಸದಸ್ಯನ ಸ್ಥಾನದಲ್ಲಿ ಭರ್ತಿಯಾಗಿರುವನೋ ಆ ಸದಸ್ಯನು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯನಾಗಿ ಉಳಿಯುತ್ತಿದ್ದ ಬಾಕಿ ಅವಧಿಯವರೆಗೆ ಮಾತ್ರ ಸದಸ್ಯನಾಗಿರತಕ್ಕದ್ದು.

**45. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.–** ಈ ಅಧಿನಿಯಮ ಅಥವಾ ಪರಿನಿಯಮಗಳು ಅಥವಾ ನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ವಿಶ್ವವಿದ್ಯಾಲಯದ ಯಾವೊಬ್ಬ ಅಧಿಕಾರಿ ಅಥವಾ ಇತರ ನೌಕರರ ವಿರುದ್ಧ ಯಾವುದೇ ದಾವೆ ಅಥವಾ ಇತರ ಕಾನೂನು ವ್ಯವಹರಣೆಗಳನ್ನು ನಡೆಸಲು ಅವಕಾಶ ಇರತಕ್ಕದ್ದಲ್ಲ.

**46. ತಾತ್ಕಾಲಿಕ ಉಪಬಂಧಗಳು.–** ಈ ಅಧಿನಿಯಮ ಮತ್ತು ಪರಿನಿಯಮಗಳ ಯಾವುದೇ ಇತರ ಉಪಬಂಧಗಳಲ್ಲಿ ಏನೇ ಇದ್ದರೂ,-

(i) ಮೊದಲ ಕುಲಪತಿ ಮತ್ತು ಸಹಕುಲಪತಿ, ಯಾರಾದರೂ ಇದ್ದರೆ, ಅವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(ii) ಮೊದಲ ಕುಲಸಚಿವರನ್ನು ಮತ್ತು ಮೊದಲ ಹಣಕಾಸು ಅಧಿಕಾರಿಯವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು; ಮತ್ತು

(iii) ಮೊದಲ ವ್ಯವಸ್ಥಾಪನ ಮಂಡಳಿ, ಮೊದಲ ಹಣಕಾಸು ಸಮಿತಿ, ಮೊದಲ ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಹಾಗೂ ಮೊದಲ ಶೈಕ್ಷಣಿಕ ಪರಿಷತ್ತನ್ನು ಕುಲಾಧಿಪತಿಯವರು ರಚಿಸತಕ್ಕದ್ದು.

**47. ಶಾಶ್ವತ ಶಾಸನಬದ್ಧ ದತ್ತಿ ನಿಧಿ.–** ((1) ವಿಶ್ವವಿದ್ಯಾಲಯವು, ಕನಿಷ್ಠ ಇಪ್ಪತ್ತೈದು ಕೋಟಿ ರೂಪಾಯಿಗಳನ್ನುಳ್ಳ ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು ಇದರ ಪೈಕಿ ಕನಿಷ್ಠ ಹದಿನೈದು ಕೋಟಿ ರೂಪಾಯಿಗಳು ನಗದು ರೂಪದಲ್ಲಿ ಮತ್ತು ಇನ್ನುಳಿದದ್ದು ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ಇರತಕ್ಕದ್ದು ಮತ್ತು ಇದನ್ನು ತಾನಾಗಿಯೆ ಹೆಚ್ಚಿಸಬಹುದಾಗಿದ್ದು ಆದರೆ ಕಡಿಮೆ ಮಾಡತಕ್ಕದ್ದಲ್ಲ.

ಪರಂತು, ಬೆಂಗಳೂರು ಅಥವಾ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊರಗಿರುವ ವಿಶ್ವವಿದ್ಯಾಲಯದ ಸಂದರ್ಭದಲ್ಲಿ ಕನಿಷ್ಠ ಹತ್ತು ಕೋಟಿ ರೂಪಾಯಿಗಳು ನಗದು ರೂಪದಲ್ಲಿರತಕ್ಕದ್ದು ಮತ್ತು ಉಳಿದ ಐದು ಕೋಟಿ ರೂಪಾಯಿಗಳು ಬ್ಯಾಂಕ್ ಗ್ಯಾರಂಟಿಯ ರೂಪದಲ್ಲಿರತಕ್ಕದ್ದು.

(2) ವಿಶ್ವವಿದ್ಯಾಲಯವು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಹಣವನ್ನು ಹೂಡಲು ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯವು ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಗೆ ವರ್ಗಾವಣೆ ಮಾಡಬಹುದು. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನೂ ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(4) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಿದ ವರಮಾನದ ಶೇಕಡಾ ಎಪ್ಪತ್ತೈದರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತೈದರಷ್ಟನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**48. ವಿಶ್ವವಿದ್ಯಾಲಯದ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ನಿಧಿಗಳನ್ನು ಒಳಗೊಂಡ ವಿಶ್ವವಿದ್ಯಾಲಯದ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದು ಕಾಲಕಾಲಕ್ಕೆ ಸ್ವೀಕರಿಸಬಹುದಾದ ದೇಣಿಗೆಗಳು ಮತ್ತು ಇತರ ನಿಧಿಗಳನ್ನು ಒಳಗೊಂಡಿರತಕ್ಕದ್ದು.

(2) ವಿಶ್ವವಿದ್ಯಾಲಯವು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ವಿಶ್ವವಿದ್ಯಾಲಯದ ದತ್ತಿನಿಧಿಯನ್ನು ಹೂಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯ ದತ್ತಿ ನಿಧಿಯು, ವಿಶ್ವವಿದ್ಯಾಲಯವು ತನ್ನ ಸಾಮಾಜಿಕ ಧ್ಯೇಯೋದ್ದೇಶಗಳನ್ನು ನೆರವೇರಿಸುವ ಸಂದರ್ಭದಲ್ಲಿ ಮತ್ತು/ಅಥವಾ ಮುಂಗಾಣದ ಸನ್ನಿವೇಶದಲ್ಲಿ ಉದ್ಭವಿಸಬಹುದಾದ ಹಣಕಾಸು ಸವಾಲುಗಳಿಂದ ತನ್ನನ್ನು

ರಕ್ಷಿಸಿಕೊಳ್ಳುವುದಕ್ಕಾಗಿ, ಸ್ವಇಚ್ಛೆಯಿಂದ ನಿರ್ವಹಿಸಿಕೊಂಡು ಬರಲು ಮತ್ತು ಜವಾಬ್ದಾರಿಯಿಂದ ಹಣ ಹೂಡಿಕೆ ಮಾಡಲು ಇಚ್ಛೆಯುಳ್ಳವರಾಗಿ ಸ್ವಯಂ ವಿಧಿಸಿಕೊಂಡ ನಿಧಿಯಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಗೆ ವರ್ಗಾಯಿಸಬಹುದು. ವಿಶ್ವವಿದ್ಯಾಲಯದ ಸಮಾಪಣೆಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನು ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(5) ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಬರುವ ವರಮಾನದ ಶೇಕಡಾ ಎಂಭತ್ತರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸದ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತರಷ್ಟನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**49. ಸಾಮಾನ್ಯ ನಿಧಿ.– (1)** ವಿಶ್ವವಿದ್ಯಾಲಯವು, ಒಂದು ಸಾಮಾನ್ಯ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯವು ವಿಧಿಸಬಹುದಾದ ಎಲ್ಲಾ ಶುಲ್ಕಗಳು;

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವುದೇ ಇತರ ಮೂಲದಿಂದ ಸ್ವೀಕರಿಸಲಾದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ದೇಣಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು;

(2) ಸಾಮಾನ್ಯ ನಿಧಿಗೆ ಜಮಾ ಮಾಡುವ ನಿಧಿಗಳನ್ನು ವಿಶ್ವವಿದ್ಯಾಲಯದ ಎಲ್ಲಾ ಆವರ್ತಕ ವೆಚ್ಚಗಳನ್ನು ಭರಿಸಲು ಉಪಯೋಗಿಸಕೊಳ್ಳತಕ್ಕದ್ದು.

**50. ಅಭಿವೃದ್ಧಿ ನಿಧಿ.– (1)** ವಿಶ್ವವಿದ್ಯಾಲಯವು, ಒಂದು ಅಭಿವೃದ್ಧಿ ನಿಧಿಯನ್ನು ಸಹ ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ವಿದ್ಯಾರ್ಥಿಗಳಿಂದ ವಿಧಿಸಬಹುದಾದ ಅಭಿವೃದ್ಧಿ ಶುಲ್ಕಗಳು;

(ii) ವಿಶ್ವವಿದ್ಯಾಲಯದ ಅಭಿವೃದ್ಧಿಯ ಉದ್ದೇಶಗಳಿಗಾಗಿ ಯಾವುದೇ ಇತರ ಮೂಲಗಳಿಂದ ಸ್ವೀಕರಿಸಿದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ವಂತಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು; ಮತ್ತು

(v) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಲಾದ ಎಲ್ಲಾ ವರಮಾನಗಳು.

(2) ಅಭಿವೃದ್ಧಿ ನಿಧಿಗೆ ಕಾಲಕಾಲಕ್ಕೆ ಜಮಾ ಮಾಡಿದ ನಿಧಿಯನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಉಪಯೋಗಿಸಕೊಳ್ಳತಕ್ಕದ್ದು.

**51. ನಿಧಿಗಳ ನಿರ್ವಹಣೆ.– 47, 48, 49** ಮತ್ತು 50ನೇ ಪ್ರಕರಣಗಳಡಿಯಲ್ಲಿ ಸ್ಥಾಪಿಸಲಾದ ನಿಧಿಗಳನ್ನು ಪ್ರಬಂಧಕ ಮಂಡಳಿಯ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ನಿಯಂತ್ರಿಸತಕ್ಕದ್ದು ಹಾಗೂ ನಿರ್ವಹಿಸತಕ್ಕದ್ದು.

**52. ವಾರ್ಷಿಕ ವರದಿ.–** (1) ವಿಶ್ವವಿದ್ಯಾಲಯದ ವಾರ್ಷಿಕ ವರದಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ಅದರ ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಪ್ರಬಂಧಕ ಮಂಡಳಿಯು ವಾರ್ಷಿಕ ವರದಿಯನ್ನು ತನ್ನ ಸಭೆಯಲ್ಲಿ ಪರಿಗಣಿಸತಕ್ಕದ್ದು ಹಾಗೂ ಅದನ್ನು ಮಾರ್ಪಾಡುಗಳೊಡನೆ ಅಥವಾ ಮಾರ್ಪಾಡುಗಳಿಲ್ಲದೆ ಅನುಮೋದಿಸಬಹುದು.

(3) ಪ್ರಬಂಧಕ ಮಂಡಳಿಯು ಸೂಕ್ತವಾಗಿ ಅನುಮೋದಿಸಿದ ವಾರ್ಷಿಕ ವರದಿಯ ಒಂದು ಪ್ರತಿಯನ್ನು ಪ್ರತಿವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ಡಿಸೆಂಬರ್ 31ಕ್ಕೆ ಮೊದಲು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**53. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.–** (1) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕ ಪತ್ರ ಮತ್ತು ಜಮಾ ಖರ್ಚು ಪಟ್ಟಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯಕ್ಕೆ ಎಲ್ಲಾ ಮೂಲಗಳಿಂದ ಪ್ರಾಪ್ತವಾಗುವ ಅಥವಾ ಸ್ವೀಕರಿಸಲಾಗುವ ಎಲ್ಲಾ ನಿಧಿಗಳು ಹಾಗೂ ವಿತರಿಸಿದ ಅಥವಾ ಸಂದಾಯ ಮಾಡಿದ ಎಲ್ಲಾ ಮೊಬಲಗುಗಳನ್ನು ವಿಶ್ವವಿದ್ಯಾಲಯವು ನಿರ್ವಹಿಸುವ ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕಪತ್ರಗಳನ್ನು ಪ್ರತಿ ವರ್ಷವೂ ಭಾರತದ ಚಾರ್ಟೆಡ್ ಅಕೌಟೆಂಟ್‌ಗಳ ಸಂಸ್ಥೆಯ ಸದಸ್ಯರಾಗಿರುವ ಒಬ್ಬ ಲೆಕ್ಕಪರಿಶೋಧಕರಿಂದ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಲೆಕ್ಕಪರಿಶೋಧನಾ ವರದಿಯೊಡನೆ, ಪ್ರತಿ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ನವೆಂಬರ್ 30ಕ್ಕೆ ಮೊದಲು ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(4) ವಾರ್ಷಿಕ ಲೆಕ್ಕಪತ್ರಗಳು, ಜಮಾಖರ್ಚು ಪಟ್ಟಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಪ್ರಬಂಧಕ ಮಂಡಳಿಯು ತನ್ನ ಸಭೆಯಲ್ಲಿ ಪರ್ಯಾಲೋಚಿಸತಕ್ಕದ್ದು ಮತ್ತು ಪ್ರಬಂಧಕ ಮಂಡಳಿಯು ಅದನ್ನು ತನ್ನ ಅಭಿಪ್ರಾಯಗಳೊಡನೆ ಸಂದರ್ಶಕರಿಗೆ ಹಾಗೂ ಸರ್ಕಾರಕ್ಕೆ ಪ್ರತಿ ವರ್ಷದ ಡಿಸೆಂಬರ್ 31ಕ್ಕೆ ಮೊದಲು ಕಳುಹಿಸತಕ್ಕದ್ದು.

**54. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಮಿತಿಯ ಯಾವುದೇ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ ಅಥವಾ ಗೊತ್ತುವಳಿಯು ಅಥವಾ ವಿಶ್ವವಿದ್ಯಾಲಯದ ಸ್ವಾಧೀನದಲ್ಲಿರುವ ಇತರ ದಾಖಲೆಗಳು ಅಥವಾ ವಿಶ್ವವಿದ್ಯಾಲಯವು ಯುಕ್ತವಾಗಿ ನಿರ್ವಹಿಸುವ ಯಾವುದೇ ರಿಜಿಸ್ಟರ್‌ನಲ್ಲಿಯ ಯಾವುದೇ ನಮೂದುಗಳ ಪ್ರತಿಯನ್ನು, ಅದರ ಮೇಲೆ ಕುಲಸಚಿವರು ಪ್ರಮಾಣೀಕರಿಸಿದ್ದರೆ, ಅದನ್ನು ಅಂಥ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ, ಗೊತ್ತುವಳಿ ಅಥವಾ ದಾಖಲೆ ಅಥವಾ ರಿಜಿಸ್ಟರ್‌ನಲ್ಲಿ ಇರುವ ನಮೂದನ್ನು ಮೇಲ್ನೋಟದ ಸಾಕ್ಷ್ಯವೆಂಬುದಾಗಿ ಸ್ವೀಕರಿಸತಕ್ಕದ್ದು ಮತ್ತು ವಿಷಯಗಳ ಸಾಕ್ಷಿಯಾಗಿ ಅಂಗೀಕರಿಸತಕ್ಕದ್ದು ಹಾಗೂ ಮೂಲ ದಾಖಲೆಗಳನ್ನೇ ಸಲ್ಲಿಸಿದ್ದರೆ ಅದನ್ನು, ದಾಖಲಿಸಿರುವ ವಿಷಯಗಳು ಮತ್ತು ವಹಿವಾಟುಗಳ ಸಾಕ್ಷ್ಯವಾಗಿ ಅಂಗೀಕರಿಸಲಾಗುತ್ತಿತ್ತೋ, ಅದೇ ರೀತಿಯಲ್ಲಿ ಇವನ್ನೂ ಸಾಕ್ಷ್ಯವಾಗಿ ಅಂಗೀಕರಿಸತಕ್ಕದ್ದು.

**55. ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ.–** ರಾಜ್ಯಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಥವಾ ಅದರಲ್ಲಿ ಇರುವ ಯಾವುವೇ ಉಪಬಂಧಗಳನ್ನು ಅಥವಾ ಅದರಡಿಯಲ್ಲಿ ರಚಿಸಿದ ಯಾವುವೇ ನಿಯಮಗಳು ಅಥವಾ ಆದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿರ್ದೇಶನ ನೀಡುವುದು ಅವಶ್ಯವೆಂದು ಅಥವಾ ಉಚಿತವೆಂದು ಅಭಿಪ್ರಾಯಪಟ್ಟಲ್ಲಿ ಅದು ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ ಅಥವಾ ಸಂದರ್ಭಾನುಸಾರವಾಗಿ ವ್ಯವಸ್ಥಾಪನಾ ಮಂಡಳಿಯು ಅಂಥ ಪ್ರತಿಯೊಂದು ನಿರ್ದೇಶನವನ್ನು ಪಾಲಿಸತಕ್ಕದ್ದು.

**56. ದಂಡಗಳು.–** (1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿತವಾದ ನಿಯಮಗಳು ಉಪಬಂಧಗಳನ್ನು ಅಥವಾ ಯಾವುದೇ ಪರೀಕ್ಷಾ ವಿಷಯಗಳನ್ನು ಅಥವಾ ಪದವಿಗಳನ್ನು ನೀಡುವುದಕ್ಕೆ ಅಥವಾ ಅಂಕಪಟ್ಟಿಗಳನ್ನು ನೀಡುವುದಕ್ಕೆ ಸಂಬಂಧಪಟ್ಟ ವಿಷಯಗಳಲ್ಲಿ ಉಲ್ಲಂಘನೆಗಳನ್ನು ಮಾಡುವ ಯಾವೊಬ್ಬ ವ್ಯಕ್ತಿಯು, ಅಪರಾಧ ನಿರ್ಣಯವಾದ ಮೇಲೆ, ಐವತ್ತು ಸಾವಿರ ರೂಪಾಯಿಗಳಿಗೆ ಕಡಿಮೆಯಲ್ಲದ ಆದರೆ ಹತ್ತು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಆರು ತಿಂಗಳ ಅವಧಿಗಿಂತ ಕಡಿಮೆಯಲ್ಲದ ಆದರೆ ಎರಡು ವರ್ಷಗಳ ಅವಧಿಯವರೆಗೆ ವಿಸ್ತರಿಸಬಹುದಾದ ಕಾರಾವಾಸದಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು:

ಪರಂತು, ವಿಶ್ವವಿದ್ಯಾಲಯವೂ ಸಹ ಒಳಗೊಂಡಿರುವಲ್ಲಿ, ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಈ ಅಧಿನಿಯಮದ ಅಡಿಯಲ್ಲಿ ನೀಡಲಾದ ಅನುಮತಿ ಪತ್ರವನ್ನು ಹಿಂತೆಗೆದುಕೊಳ್ಳತಕ್ಕದ್ದು.

(2) ಈ ಪ್ರಕರಣದ ಅಡಿಯಲ್ಲಿನ ದಂಡವನ್ನು ಇತರ ಯಾವುದೇ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಲಾದ ದಂಡಕ್ಕೆ ಬಾಧಕವಾಗದಂತೆ ವಿಧಿಸಬಹುದು.

**57. ಪ್ರವೇಶಿಸುವ ಮತ್ತು ಪರಿಶೋಧಿಸುವ ಅಧಿಕಾರ.–** ಈ ಉದ್ದೇಶಕ್ಕಾಗಿ, ರಾಜ್ಯಸರ್ಕಾರದಿಂದ ಪ್ರಾಧಿಕೃತಗೊಂಡ 'ಎ' ಸಮೂಹದ ಅಧಿಕಾರಿ ದರ್ಜೆಗಿಂತ ಕಡಿಮೆಇಲ್ಲದ ದರ್ಜೆಯ ಯಾವೊಬ್ಬ ಅಧಿಕಾರಿಯು, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಶನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ 37) ಅಡಿಯಲ್ಲಿ

ನಿರ್ದಿಷ್ಟಪಡಿಸಿರಬಹುದಾದ ಅಂಥ ಷರತ್ತುಗಳಿಗೆ ಒಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ, ಆ ಅಧಿನಿಯಮದ 9ನೇ ಪ್ರಕರಣದ ಅಡಿಯಲ್ಲಿ ಉಪಬಂಧಿಸಲಾದಂತಹವೇ ಅಧಿಕಾರಗಳನ್ನು ಚಲಾಯಿಸಲು ಮತ್ತು ಪ್ರಕಾರ್ಯಗಳನ್ನು ನೆರವೇರಿಸಲು ಅಧಿಕೃತನಾದ ಅಧಿಕಾರಿ ಎಂಬುದಾಗಿ ಭಾವಿಸತಕ್ಕದ್ದು.

**58. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ನಿರ್ದೇಶನವನ್ನು ನೀಡುವ ಅಧಿಕಾರ.–** (1) ವಿಶ್ವವಿದ್ಯಾಲಯವು ತನ್ನ ರಚನೆ ಅಥವಾ ನಿಗಮನವನ್ನು ನಿಯಂತ್ರಿಸುವ ಕಾನೂನಿಗೆ ಅನುಸಾರವಾಗಿ ತನ್ನ ಸಮಾಪನವನ್ನು ಉದ್ದೇಶಿಸಿದ್ದಲ್ಲಿ, ಅದು ಕನಿಷ್ಠ ಆರು ತಿಂಗಳ ಲಿಖಿತ ಪೂರ್ವ ಸೂಚನೆಯನ್ನು (ನೋಟಿಸು) ಸರ್ಕಾರಕ್ಕೆ ನೀಡತಕ್ಕದ್ದು.

(2) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಈ ಕೆಳಗಿನವುಗಳ ಬಗ್ಗೆ, ಎಂದರೆ:–

(i) ಪದವಿಯನ್ನು ನೀಡುವುದಕ್ಕಾಗಿ ಬೋಧನೆಯ ಗುಣಮಟ್ಟ;

(ii) ಶಿಕ್ಷಣದ ಗುಣಮಟ್ಟ;

(iii) ಉನ್ನತ ಶಿಕ್ಷಣದ ವ್ಯಾಪಾರೀಕರಣವನ್ನು ತಡೆಗಟ್ಟುವುದು;

(iv) ಅಧಿನಿಯಮದ ಉಪಬಂಧಗಳ ಉಲ್ಲಂಘನೆಯ ಬಗ್ಗೆ, ಯಾವುದಾದರೂ ಇದ್ದಲ್ಲಿ,

– ಇವುಗಳ ಬಗ್ಗೆ ನಿಯತಕಾಲಿಕ ಪರಿವೀಕ್ಷಣೆಯನ್ನು ನಡೆಸತಕ್ಕದ್ದು ಮತ್ತು ಸರ್ಕಾರಕ್ಕೆ ವರದಿಯನ್ನು ಕಳುಹಿಸತಕ್ಕದ್ದು.

(3) ದುರ್ವ್ಯವಹರಣೆ, ದುರಾಡಳಿತ ಮತ್ತು ಅಶಿಸ್ತು ಆಗಿದೆ ಎಂಬುದನ್ನು ಗುರುತಿಸಿದರೆ, ಸರ್ಕಾರವು, ವಿಶ್ವವಿದ್ಯಾಲಯದ ಆಡಳಿತವರ್ಗದವರಿಗೆ ಆಡಳಿತವನ್ನು ಸರಿಪಡಿಸಬೇಕೆಂದು ನಿರ್ದೇಶನಗಳನ್ನು ನೀಡತಕ್ಕದ್ದು. ನಿಯಮಿಸಬಹುದಾದ ಅಂಥ ಅವಧಿಯೊಳಗೆ ಆ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುವ ಹಕ್ಕು ಸರ್ಕಾರದಲ್ಲಿ ನಿಹಿತವಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ವಿಧಾನವು, ಸರ್ಕಾರವು ಈ ಸಂಬಂಧದಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು:

ಪರಂತು, ವಿಶ್ವವಿದ್ಯಾಲಯವು ತನ್ನ ಕಾರಣಗಳನ್ನು ಹೇಳಿಕೊಳ್ಳಲು ಸಮಂಜಸ ಅವಕಾಶಗಳನ್ನು ನೀಡಿದ ಹೊರತು ಅಂಥ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

(5) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೋಟಿಸನ್ನು ಸ್ವೀಕರಿಸಿದ ಮೇಲೆ, ಸರ್ಕಾರವು ಸಂಬಂಧಿಸಿದ ನಿಯಂತ್ರಣಾ ಪ್ರಾಧಿಕಾರದೊಡನೆ ಸಮಾಲೋಚಿಸಿ, ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ಅಥವಾ ವ್ಯಾಸಂಗ ಕ್ರಮವನ್ನು ಪರಿಸಮಾಪನಗೊಳಿಸಲು ಉದ್ದೇಶಿಸಿದ ದಿನಾಂಕದಿಂದ, ವಿಶ್ವವಿದ್ಯಾಲಯದಲ್ಲಿ ನಿಯತ ವ್ಯಾಸಂಗ ಕ್ರಮಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕೊನೆಯ ತಂಡ (ಬ್ಯಾಚ್) ತನ್ನ ವ್ಯಾಸಂಗ ಕ್ರಮವನ್ನು ಮುಗಿಸುವವರೆಗೆ ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು.

**59. ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು.–** (1) 58ನೇ ಪ್ರಕರಣದ (5)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ಅದರ ಆಡಳಿತಾತ್ಮಕ ವೆಚ್ಚಗಳನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ನೇಮಿಸಬಹುದಾದ ಅಂಥ ವಿಧಾನದಲ್ಲಿ ಭರಿಸತಕ್ಕದ್ದು.

(2) ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ವಿಶ್ವವಿದ್ಯಾಲಯದ ವೆಚ್ಚವನ್ನು ಭರಿಸಲು 47, 48, 49 ಮತ್ತು 50ನೇ ಪ್ರಕರಣಗಳ ಅಡಿಯಲ್ಲಿ ಉಲ್ಲೇಖಿಸಲಾದ ನಿಧಿಯು ಸಾಕಷ್ಟು ಇಲ್ಲದಿದ್ದಲ್ಲಿ, ಅಂಥ ವೆಚ್ಚವನ್ನು ಸರ್ಕಾರವು, ವಿಶ್ವವಿದ್ಯಾಲಯದ ಸ್ವತ್ತುಗಳು ಮತ್ತು ಆಸ್ತಿಗಳನ್ನು ವಿಲೇ ಮಾಡುವ ಮೂಲಕ ಭರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಸಮಾಪನೆಯು ದುರ್ವ್ಯವಹರಣೆ ಅಥವಾ ದುರಾಡಳಿತದ ಕಾರಣಗಳಿಗಾಗಿ ಆಗಿದ್ದರೆ, ಸರ್ಕಾರವು ಅಂಥ ದುರ್ವ್ಯವಹಾರಕ್ಕೆ ಅಥವಾ ದುರಾಡಳಿತಕ್ಕೆ ಹೊಣೆಯಾಗಿರುವ ವ್ಯಕ್ತಿಗಳನ್ನು ಗುರುತಿಸುವ ಮತ್ತು ಅವರ ಮೇಲೆ ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ದಂಡನೆಯನ್ನು ವಿಧಿಸಲು ಸ್ವತಂತ್ರವಾಗಿರತಕ್ಕದ್ದು.

**60. ತೊಂದರೆಗಳ ನಿವಾರಣೆಗೆ ಅಧಿಕಾರ.–** (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಅಥವಾ ಆದೇಶದ ಮೂಲಕ

ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಐದು ವರ್ಷಗಳು ಮುಕ್ತಾಯವಾದ ತರುವಾಯ ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಅಧಿಸೂಚನೆ ಅಥವಾ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

**61. ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ.–** (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ಹೊರಡಿಸಲಾದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಉಭಯ ಸದನಗಳು ಒಪ್ಪಿದರೆ ತದನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ದತಿಯು ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವನ್ನು ಉಂಟುಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಜಿ.ಕೆ.ಬೋರೇಗೌಡ**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) (500 ಪ್ರತಿಗಳು)

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ - IV-A | ಬೆಂಗಳೂರು, ಗುರುವಾರ, ಮಾರ್ಚ್ ೨೧, ೨೦೧೩ (ಫಾಲ್ಗುಣ ೩೦, ಶಕ ವರ್ಷ ೧೯೩೪) | ನಂ. ೬೨೧ |
|---|---|---|
| Part - IV-A | Bangalore, Thursday, March 21, 2013 (Phalguna 30, Shaka Varsha 1934) | No. 621 |


ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಸಚಿವಾಲಯ

ಅಧಿಸೂಚನೆ

**ಸಂಖ್ಯೆ: ಸಂವ್ಯಶಾಇ 81 ಶಾಸನ 2012, ಬೆಂಗಳೂರು, ದಿನಾಂಕ: 21.03.2013**

ರೈ ತಾಂತ್ರಿಕ ವಿಶ್ವವಿದ್ಯಾಲಯ, ಬೆಂಗಳೂರು ವಿಧೇಯಕ – ಇದಕ್ಕೆ 2013ರ ಮಾರ್ಚ್ ತಿಂಗಳ ಹನ್ನೆರಡನೇ ದಿನಾಂಕದಂದು ಘನತೆವೆತ್ತ ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2013ರ ಕರ್ನಾಟಕ ಅಧಿನಿಯಮ ಸಂಖ್ಯೆ: 40 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2013 ರ ಕರ್ನಾಟಕ ಅಧಿನಿಯಮ ಸಂಖ್ಯೆ: 40**

(2013ರ ಮಾರ್ಚ್ ಮಾಹೆಯ ಇಪ್ಪತ್ತೊಂದನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ರೈ ತಾಂತ್ರಿಕ ವಿಶ್ವವಿದ್ಯಾಲಯ, ಬೆಂಗಳೂರು ಅಧಿನಿಯಮ, 2012**

(2013ರ ಮಾರ್ಚ್ ಮಾಹೆಯ ಹನ್ನೆರಡನೇ ದಿನಾಂಕದಂದು ರಾಜ್ಯಪಾಲರ ಅನುಮತಿಯನ್ನು ಪಡೆಯಲಾಗಿದೆ)

ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ, ಆರೋಗ್ಯ ವಿಜ್ಞಾನಗಳು, ಕೃಷಿ ವಿಜ್ಞಾನಗಳು ಮತ್ತು ತಂತ್ರಜ್ಞಾನ, ವ್ಯವಸ್ಥಾಪನೆ ಮತ್ತು ತಂತ್ರಜ್ಞಾನ, ನೈಸರ್ಗಿಕ ವಿಜ್ಞಾನಗಳು, ಮಾನವಿಕಗಳು ಮತ್ತು ಸಮಾಜ ವಿಜ್ಞಾನಗಳು ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಪ್ರೋತ್ಸಾಹಿಸಲು ಮತ್ತು ಕೈಗೊಳ್ಳಲು ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದಕ್ಕಾಗಿ ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ, ಆರೋಗ್ಯ ವಿಜ್ಞಾನಗಳು, ಕೃಷಿ ವಿಜ್ಞಾನಗಳು, ವ್ಯವಸ್ಥಾಪನೆ ಮತ್ತು ತಂತ್ರಜ್ಞಾನ, ನೈಸರ್ಗಿಕ ವಿಜ್ಞಾನಗಳು, ಮಾನವಿಕಗಳು ಮತ್ತು ಸಮಾಜ ವಿಜ್ಞಾನಗಳು ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಪ್ರೋತ್ಸಾಹಿಸಲು ಮತ್ತು ಕೈಗೊಳ್ಳಲು ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೂರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

## ಅಧ್ಯಾಯ – I

## ಪ್ರಾರಂಭಿಕ

**1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.**- (1) ಈ ಅಧಿನಿಯಮವನ್ನು ರೈ ತಾಂತ್ರಿಕ ವಿಶ್ವವಿದ್ಯಾಲಯ ಬೆಂಗಳೂರು, ಅಧಿನಿಯಮ, 2012 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. ಪರಿಭಾಷೆಗಳು.**- ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) "ಶೈಕ್ಷಣಿಕ ಪರಿಷತ್ತು (ಅಕೆಡೆಮಿಕ್ ಕೌನ್ಸಿಲ್)" ಎಂದರೆ, 25ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿಸಲಾದ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು;

(ಬಿ) "ಕಾರ್ಯಸೂಚಿ ವಿಷಯಗಳು", ಎಂದರೆ, ಪರಿನಿಯಮಗಳಲ್ಲಿ ಹೆಸರಿಸಬಹುದಾದ ಮತ್ತು ಒಂದು ಸಭೆಯಲ್ಲಿ ಆ ವಿಷಯಗಳನ್ನು ಮತ್ತು ಕಲಾಪಗಳನ್ನು ಅನುಮೋದಿಸಬಹುದೆಂದು ತಮ್ಮ ಸಮ್ಮತಿ ಸೂಚಿಸಿ ಕುಲಾಧಿಪತಿಯವರು ಮುಂಚಿತವಾಗಿಯೇ ಲಿಖಿತ ಅನುಮೋದನೆಯನ್ನು ಕೊಟ್ಟಿದ್ದಾಗ ಮಾತ್ರವೇ ಸಂದರ್ಭಾನುಸಾರ ಪ್ರಬಂಧಕ ಮಂಡಳಿ ಅಥವಾ ವ್ಯವಸ್ಥಾಪನಾ ಮಂಡಳಿ ಅಥವಾ ಯಾವುದೇ ಸಮಿತಿಯವರು ಕಾರ್ಯಸೂಚಿಯಲ್ಲಿ ಸೇರಿಸಬಹುದಾದ ಅಥವಾ ಸಭೆಯಲ್ಲಿ ಚರ್ಚೆಗೆ ತೆಗೆದುಕೊಂಡು ನಿರ್ಣಯವನ್ನು ಕೊಡಬಹುದಾದ ಎಲ್ಲಾ ವಿಷಯಗಳು ಮತ್ತು ಕಲಾಪಗಳು;

(ಸಿ) "ಪ್ರಬಂಧಕ ಮಂಡಳಿ" ಎಂದರೆ, 23ನೇ ಪ್ರಕರಣದ ಅಡಿಯಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ;

(ಡಿ) "ವ್ಯವಸ್ಥಾಪನಾ ಮಂಡಳಿ" ಎಂದರೆ, 24ನೇ ಪ್ರಕರಣದ ಅಡಿಯಲ್ಲಿ ರಚಿಸಲಾದ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿ;

(ಇ) "ಕುಲಾಧಿಪತಿ", "ಕುಲಪತಿ", "ಸಹಕುಲಪತಿ" ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ ಮತ್ತು ಸಹಕುಲಪತಿ;

(ಎಫ್) "ಕ್ಯಾಂಪಸ್" ಎಂದರೆ, ಅದು ಎಲ್ಲಾದರೂ ಇರಲಿ ವಿಶ್ವವಿದ್ಯಾಲಯವು ಸ್ಥಾಪಿಸಿದ, ನಿರ್ವಹಿಸುವ ಒಂದು ಕ್ಯಾಂಪಸ್;

(ಜಿ) "ಸಮಿತಿಗಳು" ಎಂದರೆ, ಈ ಅಧಿನಿಯಮದಡಿಯಲ್ಲಿ ರೂಪಿಸಲಾದ ಸಮಿತಿಗಳು ಅಥವಾ ಸಂದರ್ಭಾನುಸಾರವಾಗಿ ವಿಶ್ವವಿದ್ಯಾಲಯದ ವಿವಿಧ ಕಾರ್ಯಕರ್ತರು ರಚಿಸಿರುವ ಸಮಿತಿಗಳು ಮತ್ತು ಅದರಲ್ಲಿ ನಾಮನಿರ್ದೇಶನ ಸಮಿತಿ, ಹಣಕಾಸು ಸಮಿತಿ ಮತ್ತು ಅಂಥ ಇತರ ಸಮಿತಿಗಳು ಒಳಗೊಳ್ಳುತ್ತವೆ;

(ಎಚ್) "ಘಟಕ ಕಾಲೇಜು" ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುತ್ತಿರುವ ಒಂದು ಕಾಲೇಜು ಅಥವಾ ಸಂಸ್ಥೆ;

(ಐ) "ಹಣಕಾಸು ಸಮಿತಿ" ಎಂದರೆ, 27ನೇ ಪ್ರಕರಣದ ಅಡಿಯಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಹಣಕಾಸು ಸಮಿತಿ;

(ಜೆ) "ಪ್ರತಿಷ್ಠಾನ" ಎಂದರೆ ರೈ ಪ್ರತಿಷ್ಠಾನ, ಇದು ನೋಂದಣಿ ಅಧಿನಿಯಮ, 1908 ರ ಅಡಿಯಲ್ಲಿ ಮತ್ತು ಆದಾಯ ತೆರಿಗೆ ಅಧಿನಿಯಮ, 1961ರ 12ಎ ಪ್ರಕರಣದ ಅಡಿಯಲ್ಲಿ ನೋಂದಾಯಿತವಾದ ಒಂದು ಸಾರ್ವಜನಿಕ ಧರ್ಮಾದಾಯ ನ್ಯಾಸ;

(ಕೆ) "ಸರ್ಕಾರ" ಎಂದರೆ, ಕರ್ನಾಟಕ ಸರ್ಕಾರ;

(ಎಲ್) "ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳು" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ, ಅಖಿಲ ಭಾರತ ತಾಂತ್ರಿಕ ವಿದ್ಯಾಪರಿಷತ್ತು, ಭಾರತೀಯ ವೈದ್ಯಕೀಯ ಪರಿಷತ್ತು, ಭಾರತೀಯ ಔಷಧ ವಿಜ್ಞಾನ ಪರಿಷತ್ತು, ಭಾರತೀಯ ಕೃಷಿ ಸಂಶೋಧನಾ ಪರಿಷತ್ತು, ರಾಷ್ಟ್ರೀಯ ಮೌಲ್ಯಮಾಪನ ಮತ್ತು ಅಧಿಮಾನ್ಯತಾ ಪರಿಷತ್ತು, ರಾಷ್ಟ್ರೀಯ ಬೋಧಕ ಶಿಕ್ಷಣ ಪರಿಷತ್ತು, ದೂರಶಿಕ್ಷಣ ಪರಿಷತ್ತು, ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಪರಿಷತ್ತುಗಳಂಥವುಗಳು, ಉನ್ನತ ಶಿಕ್ಷಣದಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುವಂತೆ ನೋಡಿಕೊಳ್ಳುವುದಕ್ಕಾಗಿ ಹಾಗೂ ಗುಣಮಟ್ಟಗಳು ಮತ್ತು ಷರತ್ತುಗಳನ್ನು ವಿಧಿಸುವುದಕ್ಕಾಗಿ, ಕೇಂದ್ರ ಸರ್ಕಾರವು ಸ್ಥಾಪಿಸಿರುವ ಒಂದು ಸಂಸ್ಥೆ ಮತ್ತು ಇದರಲ್ಲಿ ಸರ್ಕಾರವೂ ಸೇರಿರುತ್ತದೆ;

(ಎಂ) "ನಿಯಮಿಸಲಾದುದು" ಎಂದರೆ, ಈ ಅಧಿನಿಯಮದಡಿಯಲ್ಲಿ ಸರ್ಕಾರವು ರಚಿಸಲಾದ ನಿಯಮಗಳ ಮೂಲಕ ನಿಯಮಿಸಲಾದುದು;

(ಎನ್) "ಒಂದು ಘಟಕ ಕಾಲೇಜಿಗೆ ಸಂಬಂಧಪಟ್ಟಂತೆ ಪ್ರಾಂಶುಪಾಲರು" ಎಂದರೆ, ಘಟಕ ಕಾಲೇಜಿನ ಮುಖ್ಯಸ್ಥರು ಮತ್ತು ಪ್ರಾಂಶುಪಾಲರು ಇಲ್ಲದಿದ್ದಲ್ಲಿ ಅಥವಾ ನೇಮಕವಾದ ಪ್ರಾಂಶುಪಾಲರ ಗೈರುಹಾಜರಿಯಲ್ಲಿ, ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ತಾತ್ಕಾಲಿಕವಾಗಿ ನೇಮಕಗೊಂಡಿರುವ ಉಪಪ್ರಾಂಶುಪಾಲರು ಅಥವಾ ಯಾವೊಬ್ಬ ಇತರ ವ್ಯಕ್ತಿಯೂ ಇದರಲ್ಲಿ ಒಳಗೊಳ್ಳುತ್ತಾರೆ;

(ಒ) "ಕುಲಸಚಿವರು" ಎಂದರೆ, ವಿಶ್ವವಿದ್ಯಾಲಯದ ಕುಲಸಚಿವರು;

(ಪಿ) "ಪ್ರಾದೇಶಿಕ ಕೇಂದ್ರ" ಎಂದರೆ, ಯಾವುದೇ ಪ್ರದೇಶದಲ್ಲಿನ ಅಧ್ಯಯನ ಕೇಂದ್ರಗಳ ಕಾರ್ಯವನ್ನು ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ಮಾಡುವ ಉದ್ದೇಶಕ್ಕಾಗಿ ಮತ್ತು ಅಂಥ ಕೇಂದ್ರಕ್ಕೆ ವ್ಯವಸ್ಥಾಪನಾ

ಮಂಡಳಿಯು ವಹಿಸಿಕೊಡಬಹುದಾದ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸುವುದಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಅಥವಾ ನಿರ್ವಹಿಸಿಕೊಂಡುಬರುವ ಒಂದು ಕೇಂದ್ರ;

(ಕ್ಯೂ) ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ "ಪ್ರಾಯೋಜಕ ಪ್ರಾಧಿಕಾರ" ಅಥವಾ "ಪ್ರಾಯೋಜಕ ಸಂಸ್ಥೆ" ಎಂದರೆ, ಪ್ರತಿಷ್ಠಾನ ;

(ಆರ್) "ರಾಜ್ಯ" ಎಂದರೆ, ಕರ್ನಾಟಕ ರಾಜ್ಯ;

(ಎಸ್) "ಪರಿನಿಯಮಗಳು" ಮತ್ತು "ವಿನಿಯಮಗಳು" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಅನುಕ್ರಮವಾಗಿ ವಿಶ್ವವಿದ್ಯಾಲಯದ ಪರಿನಿಯಮಗಳು ಮತ್ತು ವಿನಿಯಮಗಳು;

(ಟಿ) "ಅಧ್ಯಯನ ಕೇಂದ್ರ" ಎಂದರೆ, ಶಿಕ್ಷಣದ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಅಗತ್ಯವಾದ ಬುದ್ಧಿವಾದ, ಸಲಹೆಗಳನ್ನು ನೀಡುವ ಅಥವಾ ಇತರ ಯಾವುದೇ ನೆರವನ್ನು ನೀಡುವ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಮತ್ತು ನಿರ್ವಹಿಸಿಕೊಂಡುಬಂದ ಒಂದು ಕೇಂದ್ರ;

(ಯು) "ಅಧ್ಯಾಪಕರು" ಎಂದರೆ, ಒಬ್ಬ ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಒಂದು ಘಟಕ ಕಾಲೇಜಿನಲ್ಲಿ ಬೋಧಿಸುವುದಕ್ಕೆ ಅಥವಾ ಸಂಶೋಧನೆ ನಡೆಸುವುದಕ್ಕೆ ಅಥವಾ ಸಂಶೋಧನೆಗೆ ಮಾರ್ಗದರ್ಶನ ನೀಡುವುದಕ್ಕೆ ನೇಮಕವಾದ ಅಂಥ ಇತರ ವ್ಯಕ್ತಿ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗವು ನಿಯಮಿಸಿದ ಗುಣಮಟ್ಟಗಳಿಗೆ ಅನುಸಾರವಾಗಿ ಇರುವ ಘಟಕ ಕಾಲೇಜಿನ ಪ್ರಾಂಶುಪಾಲರು ಇದರಲ್ಲಿ ಒಳಗೊಳ್ಳುತ್ತಾರೆ;

(ವಿ) "ವಿಶ್ವವಿದ್ಯಾಲಯ ಅನುದಾನಗಳ ಆಯೋಗ" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) 4ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ಆಯೋಗ;

(ಡಬ್ಲ್ಯೂ) "ವಿಶ್ವವಿದ್ಯಾಲಯ" ಎಂದರೆ, ಈ ಅಧಿನಿಯಮದಡಿಯಲ್ಲಿ ಸ್ಥಾಪಿಸಿ ನಿಗಮಿತಗೊಳಿಸಲಾದ ರೈ ತಾಂತ್ರಿಕ ವಿಶ್ವವಿದ್ಯಾಲಯ ಬೆಂಗಳೂರು;

(ಎಕ್ಸ್) "ಸಂದರ್ಶಕರು" ಎಂದರೆ, 13ನೇ ಪ್ರಕರಣದ ಅಡಿಯಲ್ಲಿ ನಿರ್ದಿಷ್ಟಪಡಿಸಿದ ವಿಶ್ವವಿದ್ಯಾಲಯದ ಸಂದರ್ಶಕರು.

## ಅಧ್ಯಾಯ- II

## ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

**3. ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ.-** (1) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಹಕ್ಕನ್ನು ನ್ಯಾಸವು ಹೊಂದಿರತಕ್ಕದ್ದು.

(2) ಪ್ರತಿಷ್ಠಾನವು ರಾಜ್ಯ ಸರ್ಕಾರಕ್ಕೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವವನ್ನು ಸಲ್ಲಿಸತಕ್ಕದ್ದು.

(3) ಪ್ರಸ್ತಾವವು ಈ ಮುಂದಿನ ವಿವರಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಪ್ರತಿಷ್ಠಾನದ ವಿವರಗಳೊಂದಿಗೆ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು;

(ii) ವಿಶ್ವವಿದ್ಯಾಲಯದ ವ್ಯಾಪ್ತಿ ಮತ್ತು ಸ್ಥಾನಮಾನ ಹಾಗೂ ಭೂಮಿಯ ಲಭ್ಯತೆ;

(iii) ಪ್ರಾರಂಭದ ದಿನಾಂಕದಿಂದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳಬೇಕೆಂದಿರುವ ಅಧ್ಯಯನ ಮತ್ತು ಸಂಶೋಧನಾ ಕಾರ್ಯಕ್ರಮಗಳ ಸ್ವರೂಪ ಮತ್ತು ಬಗೆಗಳು;

(iv) ಪ್ರಾರಂಭಿಸಬೇಕೆಂದು ಪ್ರಸ್ತಾಪಿಸಿರುವ ವ್ಯಾಸಂಗ ವಿಭಾಗಗಳು (ಫ್ಯಾಕಲ್ಟಿಗಳು), ಅಧ್ಯಯನ ಕ್ರಮಗಳು ಮತ್ತು ಸಂಶೋಧನೆಗಳ ಸ್ವರೂಪ;

(v) ಕಟ್ಟಡಗಳು, ಸಲಕರಣೆಗಳು ಮತ್ತು ರಚನಾ ಸೌಕರ್ಯಗಳನ್ನು ಒದಗಿಸುವಂಥ ಕ್ಯಾಂಪಸ್ ಅಭಿವೃದ್ಧಿ;

(vi) ಪ್ರಾರಂಭದ ದಿನಾಂಕದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಗಾಗಿ ಬಂಡವಾಳ ವೆಚ್ಚದ ಹಂತಗಳು;

(vii) ಬಾಬುವಾರು ಆವರ್ತಕ ವೆಚ್ಚ, ಆರ್ಥಿಕ ಮೂಲಗಳು ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ತಗಲುವ ಅಂದಾಜು ವೆಚ್ಚ;

(viii) ಸಂಪನ್ಮೂಲ ಸಂಗ್ರಹಣೆಗಾಗಿ ಯೋಜನೆ ಮತ್ತು ಅದಕ್ಕೆ ಬಂಡವಾಳದಿಂದ ತಗಲುವ ವೆಚ್ಚ ಹಾಗೂ ಪ್ರತಿಯೊಂದು ಮೂಲಕ್ಕೂ ಮರು ಸಂದಾಯ ಮಾಡುವ ರೀತಿ;

(ix) ವಿದ್ಯಾರ್ಥಿಗಳಿಂದ ಶುಲ್ಕ ವಸೂಲು ಮಾಡಿ ಆಂತರಿಕವಾಗಿ ನಿಧಿ ಸಂಗ್ರಹಿಸುವ ಯೋಜನೆ, ಸಲಹಾ ಸೇವೆ ಮತ್ತು ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಿಗೆ ಸಂಬಂಧಿಸಿದ ಇತರ ಚಟುವಟಿಕೆಗಳಿಂದ ನಿರೀಕ್ಷಿತ ವರಮಾನಗಳು ಮತ್ತು ಇತರ ನಿರೀಕ್ಷಿತ ವರಮಾನಗಳು;

(x) ಘಟಕವೊಂದಕ್ಕೆ ತಗಲುವ ವೆಚ್ಚದ ವಿವರಗಳು, ಆರ್ಥಿಕವಾಗಿ ದುರ್ಬಲವಾದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕ, ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿ ವೇತನದಲ್ಲಿ ನೀಡುವ ರಿಯಾಯಿತಿ ಅಥವಾ ವಿನಾಯತಿಯ ಪರಿಮಿತಿಯ ವಿವರಗಳನ್ನು ಮತ್ತು ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳಿಗೆ ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳು ಪ್ರಾಯೋಜಿಸಿದ ವಿದ್ಯಾರ್ಥಿಗಳಿಗೆ ಮತ್ತು

ಭಾರತವನ್ನುಳಿದು ಇತರ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ವಿಧಿಸತಕ್ಕ ಶುಲ್ಕದ ದರಗಳು ಬೇರೆ ಬೇರೆ ಇದ್ದಲ್ಲಿ ಅವುಗಳನ್ನು ಸೂಚಿಸುವ ಶುಲ್ಕ ರಚನೆಯ ವಿವರಗಳು;

(xi) ಸಂಬಂಧಪಟ್ಟ ವಿದ್ಯಾ ವಿಭಾಗದಲ್ಲಿ ಎಷ್ಟು ವರ್ಷಗಳ ಅನುಭವ ಮತ್ತು ಪರಿಣಿತಿಯನ್ನು ಪ್ರತಿಷ್ಠಾನವು ದೊರಕಿಸಿಕೊಡಲಿದೆ ಹಾಗೂ ಅದರ ಹಣಕಾಸಿನ ಸಂಪನ್ಮೂಲಗಳು;

(xii) ವಿಶ್ವವಿದ್ಯಾಲಯದಲ್ಲಿರುವ ಅಧ್ಯಯನ ಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕಾಗಿ ಇರುವ ವ್ಯವಸ್ಥೆ;

(xiii) ವಿಶ್ವವಿದ್ಯಾಲಯವು ಸ್ಥಾಪನೆಯಾಗುವುದಕ್ಕೆ ಮೊದಲು ನೆರವೇರಿಸಬೇಕೆಂದು ರಾಜ್ಯ ಸರ್ಕಾರವು ಅಗತ್ಯಪಡಿಸಬಹುದಾದ ಅಂಥ ಇತರ ಷರತ್ತುಗಳ ನೆರವೇರಿಕೆಯ ಹಂತ.

(4) ಸ್ವೀಕರಿಸಿದ ಪ್ರಸ್ತಾವಗಳನ್ನು ಪರೀಕ್ಷಿಸಲು ರಾಜ್ಯ ಸರ್ಕಾರವು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಪದನಿಮಿತ್ತ ಸದಸ್ಯರಾದ ಮೂರು ಸದಸ್ಯರುಗಳನ್ನು ಒಳಗೊಂಡ ಒಂದು ಪರಿಶೋಧನಾ ಸಮಿತಿಯನ್ನು ರಚಿಸತಕ್ಕದ್ದು ಮತ್ತು ಅದು ರಾಜ್ಯ ಸರ್ಕಾರಕ್ಕೆ ಶಿಫಾರಸ್ಸನ್ನು ಮಾಡತಕ್ಕದ್ದು.

**4. ವಿಶ್ವವಿದ್ಯಾಲಯದ ಸ್ಥಾಪನೆ.–** (1) ರಾಜ್ಯ ಸರ್ಕಾರವು ಪರಿಶೋಧನಾ ಸಮಿತಿಯು ಮಾಡಿದ ಶಿಫಾರಸ್ಸುಗಳನ್ನು ಪರಿಶೀಲಿಸಿದ ತರುವಾಯ ಮತ್ತು ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ,–

(i) ಪ್ರತಿಷ್ಠಾನವು ಸಾಕಷ್ಟು ಮೂಲ ಸೌಕರ್ಯದೊಂದಿಗೆ ವಿಶ್ವವಿದ್ಯಾಲಯವೊಂದನ್ನು ನಡೆಸಲು ಸಮರ್ಥವಾಗಿದೆ ಎಂದು ಅದು ಮನಗಂಡರೆ;

(ii) ಪ್ರದೇಶಕ್ಕನುಸಾರವಾಗಿ ಕೆಳಗೆ ನಿರ್ದಿಷ್ಟ ಪಡಿಸಿದ ವ್ಯಾಪ್ತಿಗೆ ಭೂಮಿಯ ಒಡೆಯತನವನ್ನು ಹೊಂದಿರತಕ್ಕದ್ದು, ಎಂದರೆ:–

(ಎ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯೊಳಗಿದ್ದರೆ ಇಪ್ಪತ್ತೈದು ಎಕರೆಗಳು;

(ಬಿ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯಿಂದ ಹೊರಗೆ ಇದ್ದು ಆದರೆ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಪ್ರದೇಶದ ಒಳಗೆ ಇದ್ದರೆ ನಲವತ್ತು ಎಕರೆಗಳು;

(ಸಿ) ಭೂಮಿಯು (ಎ) ಮತ್ತು (ಬಿ) ಖಂಡಗಳಲ್ಲಿ ನಿರ್ದಿಷ್ಟಪಡಿಸಿದ ಸ್ಥಳಗಳನ್ನು ಹೊರತುಪಡಿಸಿದ್ದರೆ ಅರವತ್ತು ಎಕರೆಗಳಿಗಿಂತ ಕಡಿಮೆ ಇರತಕ್ಕದ್ದಲ್ಲ.

ಮೇಲೆ ನಿರ್ದಿಷ್ಟಪಡಿಸಿದ ಭೂಮಿಯು ಏಕ ಘಟಕ (ಸಿಂಗಲ್ ಬ್ಲಾಕ್) ದಲ್ಲಿರತಕ್ಕದ್ದು ಮತ್ತು ಇದು ಸಂಬಂಧಪಟ್ಟ ನ್ಯಾಸ /ಪ್ರತಿಷ್ಠಾನ/ ಸಂಸ್ಥೆ/ ವಿಶ್ವವಿದ್ಯಾಲಯದ ಹೆಸರಿನಲ್ಲಿರತಕ್ಕದ್ದು. 3ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ಅಗತ್ಯಪಡಿಸಲಾದಂತೆ ಒದಗಿಸಿದ ವಿವರಗಳ ಆಧಾರದ ಮೇಲೆ ಸರ್ಕಾರವು 47ನೇ ಪ್ರಕರಣದ ಅಡಿಯಲ್ಲಿ ನಿರ್ದಿಷ್ಟಪಡಿಸಿರುವ ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಬೇಕೆಂದು ಪ್ರತಿಷ್ಠಾನಕ್ಕೆ ನಿರ್ದೇಶನ ನೀಡಬಹುದು.

(2) ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಸ್ಥಾಪನೆಯ ತರುವಾಯ, ರಾಜ್ಯ ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, "ರೈ ತಾಂತ್ರಿಕ ವಿಶ್ವವಿದ್ಯಾಲಯ ಬೆಂಗಳೂರು" ಎಂಬ ಹೆಸರಿನ ಏಕಾತ್ಮಕ ಸ್ವರೂಪದ ಒಂದು ವಿಶ್ವವಿದ್ಯಾಲಯವನ್ನು ರಾಜ್ಯದಲ್ಲಿ ಸ್ಥಾಪಿಸುವುದಕ್ಕೆ ಮಂಜೂರಾತಿಯನ್ನು ನೀಡಬಹುದು.

(3) ವಿಶ್ವವಿದ್ಯಾಲಯದ ಕೇಂದ್ರ ಕಾರ್ಯಸ್ಥಾನವು ದೊಡ್ಡಬಳ್ಳಾಪುರದಲ್ಲಿ ಇರತಕ್ಕದ್ದು. ವಿಶ್ವವಿದ್ಯಾಲಯವು ತನ್ನ ಕ್ಯಾಂಪಸ್ಸುಗಳನ್ನು ಅಥವಾ ಪ್ರಾದೇಶಿಕ ಕೇಂದ್ರಗಳನ್ನು, ಅಧ್ಯಯನ ಕೇಂದ್ರಗಳನ್ನು ಕರ್ನಾಟಕದ ಯಾವುದೇ ಭಾಗದಲ್ಲಿ ಹೊಂದಿರತಕ್ಕದ್ದು ಮತ್ತು ಆ ಬಗ್ಗೆ ರಾಜ್ಯ ಸರ್ಕಾರದ ಪೂರ್ವಾನುಮತಿಯನ್ನು ಪಡೆದುಕೊಳ್ಳುವುದಕ್ಕೊಳಪಟ್ಟು ಹಾಗೂ ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗನುಸಾರವಾಗಿ ಹೊಂದಿರತಕ್ಕದ್ದು.

(4) ಮೊದಲ ಕುಲಾಧಿಪತಿಯವರು, ಮೊದಲ ಕುಲಪತಿಯವರು, ಪ್ರಬಂಧಕ ಮಂಡಳಿಯ ಮೊದಲ ಸದಸ್ಯರುಗಳು, ವ್ಯವಸ್ಥಾಪನಾ ಮಂಡಳಿಯ ಹಾಗೂ ಶೈಕ್ಷಣಿಕ ಪರಿಷತ್ತಿನ ಮೊದಲ ಸದಸ್ಯರುಗಳು ಮತ್ತು ಇನ್ನು ಮುಂದೆ, ಅಂಥ ಅಧಿಕಾರಿಗಳು ಅಥವಾ ಸದಸ್ಯರುಗಳಾಗಬಹುದಾದಂಥ ಎಲ್ಲಾ ವ್ಯಕ್ತಿಗಳು, ಅಂಥ ಪದ ಅಥವಾ ಸದಸ್ಯತ್ವವನ್ನು ಹೊಂದಿರುವುದು ಮುಂದುವರೆಯುವವರೆಗೆ, ಒಂದು ನಿಗಮಿತ ನಿಕಾಯವನ್ನು ರಚಿಸತಕ್ಕದ್ದು ಮತ್ತು ಅದು ವಿಶ್ವವಿದ್ಯಾಲಯದ ಹೆಸರಿನಲ್ಲಿ ದಾವೆ ಹೂಡಬಹುದು ಮತ್ತು ದಾವೆಗೊಳಗಾಗಬಹುದು.

(5) (2)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಸ್ಥಾಪನೆಗೆ ಮಂಜೂರಾತಿಯಾದ ಮೇಲೆ, ವಿಶ್ವವಿದ್ಯಾಲಯದ ಉದ್ದೇಶಕ್ಕಾಗಿ, ಪ್ರತಿಷ್ಠಾನವು ಆರ್ಜಿಸಿದ, ಸೃಜಿಸಿದ, ಏರ್ಪಾಟು ಮಾಡಿಕೊಂಡ ಅಥವಾ ಕಟ್ಟಲ್ಪಟ್ಟ ಭೂಮಿ ಮತ್ತು ಇತರ ಸ್ಥಿರ ಮತ್ತು ಚರ ಸ್ವತ್ತು, ವಿಶ್ವವಿದ್ಯಾಲಯದಲ್ಲಿ ನಿಹಿತವಾಗಿರತಕ್ಕದ್ದು.

(6) ವಿಶ್ವವಿದ್ಯಾಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದ ಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂಥ ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

(7) ವಿಶ್ವವಿದ್ಯಾಲಯದಲ್ಲಿನ ಭೂಮಿ, ಕಟ್ಟಡ ಮತ್ತು ಇತರ ಸ್ವತ್ತುಗಳನ್ನು ವಿಶ್ವವಿದ್ಯಾಲಯದ ಉದ್ದೇಶಗಳಿಗೆ ಆನುಷಂಗಿಕವಾಗಿರುವುದನ್ನು ಹೊರತುಪಡಿಸಿ ಇತರ ಯಾವುದೇ ಉದ್ದೇಶಕ್ಕಾಗಿ ಬಳಸತಕ್ಕದ್ದಲ್ಲ.

**5. ಅನುದಾನಗಳು ಮತ್ತು ಹಣಕಾಸು ನೆರವು.–** ವಿಶ್ವವಿದ್ಯಾಲಯವು ಸ್ವಂತ ಧನಮೂಲ ಉಳ್ಳದ್ದಾಗಿರತಕ್ಕದ್ದು ಮತ್ತು ರಾಜ್ಯದಿಂದ ಅಥವಾ ರಾಜ್ಯದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಇತರ ಸಂಸ್ಥೆ ಅಥವಾ ನಿಗಮದಿಂದ ಯಾವುದೇ ನಿರ್ವಹಣಾ ಸಹಾಯ ಅನುದಾನ ಅಥವಾ ಯಾವುದೇ ಹಣಕಾಸು ನೆರವನ್ನು ಹಕ್ಕಿನಿಂದ ಕೇಳತಕ್ಕದ್ದಲ್ಲ ಅಥವಾ ಅದನ್ನು ಪಡೆಯಲು ಹಕ್ಕನ್ನು ಹೊಂದಿರತಕ್ಕದ್ದಲ್ಲ:

ಪರಂತು, ರಾಜ್ಯವು,–

(ಎ) ಇತರ ರಾಜ್ಯ ಸರ್ಕಾರದ ಸಂಘಟನೆಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿರುವಂಥದ್ದೇ ಸಂಶೋಧನೆ, ಅಭಿವೃದ್ಧಿ ಮತ್ತಿತರ ಚಟುವಟಿಕೆಗಳಿಗಾಗಿ; ಅಥವಾ

(ಬಿ) ಸರ್ಕಾರದಿಂದ ನೆರವನ್ನು ಪಡೆಯುವ ಯಾವುದೇ ನಿರ್ದಿಷ್ಟ ಸಂಶೋಧನೆ ಅಥವಾ ಕಾರ್ಯಕ್ರಮಗಳಿಗಾಗಿ; ಮತ್ತು

(ಸಿ) ರಾಜ್ಯ ಕಾರ್ಯನೀತಿಯ ಬದಲಾವಣೆಗೆ ಒಳಪಟ್ಟು ಅಥವಾ ಅನ್ಯಥಾ ಇದೇ ಬಗೆಯ ವಿಶ್ವವಿದ್ಯಾಲಯಗಳಿಗಾಗಿ ಅಥವಾ ಅವುಗಳ ಪ್ರಯೋಜನಕ್ಕಾಗಿ,

–ಅನುದಾನದ ಮೂಲಕ ಅಥವಾ ಅನ್ಯಥಾ ಹಣಕಾಸು ಬೆಂಬಲವನ್ನು ಒದಗಿಸಬಹುದು:

ಮತ್ತು ಪರಂತು, ವಿಶ್ವವಿದ್ಯಾಲಯವು, ಯಾವುದೇ ಇತರ ಮೂಲದಿಂದ ಯಾವುದೇ ಆರ್ಥಿಕ ನೆರವನ್ನು ಸ್ವೀಕರಿಸಬಹುದು.

**6. ಘಟಕ ಕಾಲೇಜು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಅಥವಾ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದಕ್ಕೆ ಅಧಿಕಾರ.–** ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಐದು ವರ್ಷಗಳನ್ನು ಪೂರ್ಣಗೊಳಿಸಿದ ನಂತರ ವಿಶ್ವವಿದ್ಯಾಲಯ ಅನುದಾನ ಆಯೋಗದ ಮತ್ತು ಇತರ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ಗುಣಮಟ್ಟಗಳಿಗೆ ಒಳಪಟ್ಟು ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ವಿಶ್ವವಿದ್ಯಾಲಯವು, ರಾಜ್ಯದಲ್ಲಿ ತನಗೆ ಸೂಕ್ತವೆನಿಸುವಂಥ ಸ್ಥಳಗಳಲ್ಲಿ ಘಟಕ ಕಾಲೇಜುಗಳು, ಪ್ರಾದೇಶಿಕ ಕೇಂದ್ರಗಳು, ಹೆಚ್ಚುವರಿ ಕ್ಯಾಂಪಸ್‌ಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದಿರಬಹುದು.

**7. ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು.–** ವಿಶ್ವವಿದ್ಯಾಲಯವು, ತನ್ನ ಭವಿಷ್ಯದ್‌ದೃಷ್ಟಿ ಮತ್ತು ಧ್ಯೇಯೋದ್ದೇಶಗಳನ್ನು ಸಾಧಿಸಲು ಈ ಮುಂದಿನ ವಿಸ್ತೃತ ಕಾರ್ಯತಂತ್ರಗಳನ್ನು ಕೈಗೊಳ್ಳತಕ್ಕದ್ದು.–

(i) (ಎ) ಸಿವಿಲ್, ವಾಸ್ತು ಶಿಲ್ಪ (ಆರ್ಕಿಟೆಕ್ಚರ್), ಮೆಕ್ಯಾನಿಕಲ್, ಆಟೋಮೊಬೈಲ್, ಎಲೆಕ್ಟ್ರಿಕಲ್, ಎಲೆಕ್ಟ್ರಾನಿಕ್ಸ್ ಮತ್ತು ಸಂವಹನ (ಕಮ್ಯುನಿಕೇಷನ್), ಕಂಪ್ಯೂಟರ್ ಸೈನ್ಸ್ ಮತ್ತು ಇಂಜಿನಿಯರಿಂಗ್, ಮಾಹಿತಿ ತಂತ್ರಜ್ಞಾನ (ಇನ್‌ಫರ್‌ಮೇಷನ್ ಟೆಕ್ನಾಲಜಿ) 3–ಡಿಯನ್ನು ಒಳಗೊಂಡ ವಿನ್ಯಾಸ (ಡಿಸೈನ್) ಮತ್ತು ಮುದ್ರಣ ತಾಂತ್ರಿಕತೆ (ಪ್ರಿಂಟಿಂಗ್ ಟೆಕ್ನಾಲಜಿ), ಪರಿಸರ ಇಂಜಿನಿಯರಿಂಗ್ (ಎನ್ವಿರಾನ್ಮೆಂಟಲ್ ಇಂಜಿನಿಯರಿಂಗ್), ಜೈವಿಕ ತಂತ್ರಜ್ಞಾನ (ಬಯೋ–ಟೆಕ್ನಾಲಜಿ), ಬಾಹ್ಯಾಕಾಶ ತಂತ್ರಜ್ಞಾನ (ಸ್ಪೇಸ್ ಟೆಕ್ನಾಲಜಿ), ನ್ಯಾನೊ ವಿಷಯಗಳು ಮತ್ತು ತಂತ್ರಜ್ಞಾನ (ಟೆಕ್ನಾಲಜಿ) ಇವುಗಳನ್ನು ಒಳಗೊಂಡ ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ ಮತ್ತು ಅಂತರ್ ವಿಷಯಗಳು ಮುಂತಾದವುಗಳನ್ನು ಒಳಗೊಂಡಂತೆ ಹೊಸದಾಗಿ ರೂಪುಗೊಳ್ಳುತ್ತಿರುವ ಯಾವುದೇ ಇತರ ಕ್ಷೇತ್ರಗಳು;

(ಬಿ) ವೈದ್ಯಕೀಯ, ದಂತ ವೈದ್ಯಕೀಯ, ಆಯುರ್ವೇದ, ಹೋಮಿಯೋಪತಿ, ನ್ಯಾಚುರೋಪತಿ, ಔಷಧ ತಯಾರಿಕಾ ಶಾಸ್ತ್ರ, ನರ್ಸಿಂಗ್ ಇವುಗಳನ್ನು ಒಳಗೊಂಡ ಆರೋಗ್ಯ ವಿಜ್ಞಾನಗಳು ಮತ್ತು ಅಂತರ್ ವಿಷಯಗಳು ಮುಂತಾದವುಗಳನ್ನು ಒಳಗೊಂಡಂತೆ ಹೊಸದಾಗಿ ರೂಪುಗೊಳ್ಳುತ್ತಿರುವ ಯಾವುದೇ ಇತರ ಕ್ಷೇತ್ರಗಳು;

(ಸಿ) ಕೃಷಿ ವಿಜ್ಞಾನ ಮತ್ತು ತಂತ್ರಜ್ಞಾನ ವಿದ್ಯಾಲಯ ಅಥವಾ ಕಾಲೇಜು ಅಥವಾ ಕೇಂದ್ರ;

(ಡಿ) ವ್ಯವಹಾರ ನಿರ್ವಹಣೆ, ಪ್ರವಾಸೋದ್ಯಮ ನಿರ್ವಹಣೆ, ಹೋಟೆಲ್ ನಿರ್ವಹಣೆ, ಆತಿಥ್ಯ ನಿರ್ವಹಣೆ, ಆಸ್ಪತ್ರೆ ನಿರ್ವಹಣೆ, ವಿಪತ್ತು ನಿರ್ವಹಣೆ, ಅಪಾಯ ನಿರ್ವಹಣೆಗಳನ್ನು ಒಳಗೊಂಡ ನಿರ್ವಹಣೆ ಮತ್ತು ತಾಂತ್ರಿಕತೆ ಹಾಗೂ ಅಂತರ್ ವಿಷಯಗಳು ಮುಂತಾದವುಗಳನ್ನು ಒಳಗೊಂಡಂತೆ ಹೊಸದಾಗಿ ರೂಪುಗೊಳ್ಳುತ್ತಿರುವ ಯಾವುದೇ ಇತರ ಕ್ಷೇತ್ರಗಳು;

(ಇ) ಭೌತಶಾಸ್ತ್ರ, ಎಲೆಕ್ಟ್ರಾನಿಕ್ಸ್, ಗಣಿತ ಶಾಸ್ತ್ರ, ಕಂಪ್ಯೂಟರ್ ಸೈನ್ಸ್, ರಾಸಾಯನಿಕ ಮತ್ತು ಪರಿಸರ ವಿಜ್ಞಾನ, ಜೀವಿ ವಿಜ್ಞಾನ, ಭೂ ವಿಜ್ಞಾನ, ಬಾಹ್ಯಾಕಾಶ ವಿಜ್ಞಾನ, ನ್ಯಾನೋ ವಿಜ್ಞಾನ ಮತ್ತು ನ್ಯಾನೋ ವಿಷಯಗಳನ್ನೂ ಒಳಗೊಂಡಂತೆ ನಿಸರ್ಗ ವಿಜ್ಞಾನ ಮತ್ತು ಅಂತರ್ ವಿಷಯಗಳು ಮುಂತಾದವುಗಳನ್ನು ಒಳಗೊಂಡಂತೆ ಅಧ್ಯಯನದ ಹೊಸದಾಗಿ ರೂಪುಗೊಳ್ಳುತ್ತಿರುವ ಯಾವುದೇ ಇತರ ಕ್ಷೇತ್ರಗಳು;

(ಎಫ್) ಇತಿಹಾಸ, ಕನ್ನಡ, ಅರ್ಥಶಾಸ್ತ್ರ, ರಾಜಕೀಯ ಶಾಸ್ತ್ರ, ಪತ್ರಿಕೋದ್ಯಮ, ಪ್ರವಾಸೋದ್ಯಮ, ಕಾನೂನು, ತತ್ತ್ವಶಾಸ್ತ್ರ, ಪುರಾಣಗಳು ಮತ್ತು ಪ್ರವಚನಗಳು, ಸಂಗೀತ, ಕಲೆ, 3–ಡಿ ವಿನ್ಯಾಸವನ್ನು ಒಳಗೊಂಡ ಫ್ಯಾಶನ್ ವಿನ್ಯಾಸ, ಆ್ಯನಿಮೇಷನ್, ಸಂಸ್ಕೃತಿ, ಸಾಮಾಜಿಕ ಕಾರ್ಯಗಳು, ಸಂಸ್ಕೃತ, ಆಂಗ್ಲ, ಇತರ ಭಾರತೀಯ ಮತ್ತು ವಿದೇಶಿ ಭಾಷೆಗಳನ್ನು ಒಳಗೊಂಡ ಮಾನವಿಕ ಶಾಸ್ತ್ರಗಳು ಮತ್ತು ಸಮಾಜ ವಿಜ್ಞಾನಗಳು ಹಾಗೂ ಅಂತರ್ ವಿಷಯ ಮುಂತಾದವುಗಳನ್ನು ಒಳಗೊಂಡ ಹೊಸದಾಗಿ ರೂಪುಗೊಳ್ಳುತ್ತಿರುವ ಯಾವುದೇ ಇತರ ಕ್ಷೇತ್ರಗಳು;

(ಜಿ) ವಿಶ್ವದಾದ್ಯಂತ ಅಧ್ಯಯನದಲ್ಲಿ ಹೊಸದಾಗಿ ರೂಪುಗೊಳ್ಳುತ್ತಿರುವ ಯಾವುದೇ ಇತರ ಕ್ಷೇತ್ರಗಳು ಅಥವಾ ಅಧ್ಯಯನದ ವಿಷಯಗಳು ಅಥವಾ ಕ್ಷೇತ್ರಗಳು.

–ಇಂಥ ವಿಷಯಗಳಲ್ಲಿ ಪ್ರಾರಂಭಿಕ ಶಿಕ್ಷಣ, ಪ್ರೌಢಶಿಕ್ಷಣ, ಉನ್ನತ ಶಿಕ್ಷಣಗಳಂಥ ವಿವಿಧ ಹಂತಗಳಲ್ಲಿ ಶಿಕ್ಷಣ, ಬೋಧನೆ ಮತ್ತು ಬರವಣಿಗೆ ಹಾಗೂ ಓದನ್ನು ಒಳಗೊಂಡಂಥ ಕಲಿಕೆ, ತರಬೇತಿ, ಸಂಶೋಧನೆ ಮತ್ತು ಅಭಿವೃದ್ಧಿಗಳಿಗೆ ಅವಕಾಶವನ್ನು ಕಲ್ಪಿಸಿ ಜ್ಞಾನದ ಜಗತ್ತಿನ ಪರಿಧಿಯನ್ನು ವಿಸ್ತರಿಸುವುದು.

(ii) ಬೋಧಕರಿಗಾಗಿ, ಬೋಧಕ ಶಿಕ್ಷಕರಿಗಾಗಿ, ಉನ್ನತ ಹಾಗೂ ವೃತ್ತಿ ಶಿಕ್ಷಣ ಕ್ಷೇತ್ರಗಳಲ್ಲಿನ ಬೋಧಕರಿಗಾಗಿ, ಉನ್ನತ ಗುಣಮಟ್ಟದ ತರಬೇತಿ, ಸಾಮರ್ಥ್ಯ ನಿರ್ಮಾಣ ಮತ್ತು ಅಭಿವೃದ್ಧಿ ವ್ಯವಸ್ಥೆಯನ್ನು ಶಿಕ್ಷಣ ಮತ್ತು ಇತರ ವ್ಯವಸ್ಥೆಗಳಲ್ಲಿನ ರಾಜಕೀಯ ನಾಯಕರು, ಆಡಳಿತಗಾರರು ಮತ್ತು ಅಭಿವೃದ್ಧಿ ವೃತ್ತಿಪರರಿಗಾಗಿ ನಾಯಕತ್ವದ ತರಬೇತಿಯನ್ನು ವಿನ್ಯಾಸಗೊಳಿಸುವುದು ಮತ್ತು ನೀಡುವುದು;

(iii) (ಎ) ನಿರ್ಧರಣೆಯ ಆಧುನಿಕ ವಿಧಾನಗಳನ್ನು ಒಳಗೊಂಡಂತೆ ವಿವಿಧ ವಿಧಾನಗಳ ಮೂಲಕ ಮೌಲ್ಯಮಾಪನ ಮಾಡಿದ ಶೈಕ್ಷಣಿಕ ಕಾರ್ಯವನ್ನು ಯಶಸ್ವಿಯಾಗಿ ಪೂರೈಸಿರುವುದರ ಆಧಾರದ ಮೇಲೆ; ಮತ್ತು

(ಬಿ) ಮೂಲ ಪುಸ್ತಕ ಅಥವಾ ಪುಸ್ತಕಗಳ ಬರವಣಿಗೆ, ಸಂಶೋಧನಾ ಲೇಖನಗಳ ಪ್ರಕಟಣೆ, ಕಲಿಕೆಯ ವಿವಿಧ ಕ್ಷೇತ್ರಗಳಲ್ಲಿನ ತಜ್ಞ ವ್ಯಕ್ತಿಗಳು ಸಾಂಸ್ಕೃತಿಕ ಮತ್ತು ಆಧ್ಯಾತ್ಮಿಕ ಕ್ಷೇತ್ರಗಳಲ್ಲಿನ ಸೇವೆಗಳಂಥ ಅಸಾಧಾರಣ ಕೊಡುಗೆಗಳನ್ನು ನೀಡಿದುದರ ಆಧಾರದ ಮೇಲೆ,

–ಪದವಿಗಳನ್ನು, ಪಿಜಿ ಡಿಪ್ಲೊಮೊಗಳನ್ನು ಒಳಗೊಂಡ ಡಿಪ್ಲೊಮೊಗಳನ್ನು, ದ್ವಿ ಪದವಿ ಪ್ರೋಗ್ರಾಮ್‌ಗಳನ್ನು, ಸಂಯೋಜಿತ ಕೋರ್ಸುಗಳನ್ನು, ಪ್ರಮಾಣ ಪತ್ರಗಳನ್ನು (ಸರ್ಟಿಫಿಕೆಟ್ಸ್) ಮತ್ತು ಪಾರಿತೋಷಕಗಳು, ಯಶೋಪತ್ರ ಪ್ರದಾನದಂಥ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು.

(iv) ವಿದ್ಯಾರ್ಥಿಗಳಿಗೆ, ಬೋಧಕ ಸದಸ್ಯರಿಗೆ ಮತ್ತು ಇತರರಿಗೆ ನಿರ್ದಿಷ್ಟ ಶೈಕ್ಷಣಿಕ ಮತ್ತು ಸಂಶೋಧನಾ ಕಾರ್ಯಕ್ರಮಗಳು, ತರಬೇತಿ ಕಾರ್ಯಕ್ರಮಗಳು ಮತ್ತು ವಿಚಾರ ವಿನಿಮಯ ಕಾರ್ಯಕ್ರಮಗಳನ್ನು ಪರಿಕಲ್ಪಿಸಲು, ವಿನ್ಯಾಸಗೊಳಿಸಲು, ಅಭಿವೃದ್ಧಿಪಡಿಸಲು ಮತ್ತು ನೀಡಲು ಯಾವುವೇ ಇತರ ವಿಶ್ವವಿದ್ಯಾಲಯಗಳು ಸಂಶೋಧನಾ ಸಂಸ್ಥೆಗಳು, ಲಾಭರಹಿತ ಸಂಘಟನೆಗಳು, ಕೈಗಾರಿಕಾ ಸಂಘಗಳು, ವೃತ್ತಿಪರ ಸಂಘಗಳು ಅಥವಾ ಇತರ ಸಂಘಗಳೊಂದಿಗೆ ಸಹಯೋಗವನ್ನು ಕಲ್ಪಿಸುವುದು;

(v) ಉಪನ್ಯಾಸ ಮಾಲಿಕೆಗಳು, ವಿಚಾರ ಸಂಕಿರಣಗಳು, ಸಮ್ಮೇಳನಗಳು, ಕಾರ್ಯಾಗಾರ ಶಿಕ್ಷಣ ಕಾರ್ಯಕ್ರಮಗಳು, ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳು, ಪ್ರಕಟಣೆಗಳು ಮತ್ತು ತರಬೇತಿ ಕಾರ್ಯಕ್ರಮಗಳು ಹಾಗೂ ಕಾರ್ಯಸೂಚಿಗಳ ಮೂಲಕ ಜ್ಞಾನ ಪ್ರಸಾರ ಮಾಡುವುದು ಮತ್ತು ಶಿಕ್ಷಣ ಮತ್ತು ತತ್ಸಂಬಂಧಿತ ಅಭಿವೃದ್ಧಿ ಕ್ಷೇತ್ರಗಳ ವಿಷಯಗಳ ಬಗ್ಗೆ ಸಾರ್ವಜನಿಕ ಚರ್ಚೆಯನ್ನು ಏರ್ಪಡಿಸುವುದು;

(vi) ಒಂದೇ ತೆರನಾದ ದೃಷ್ಟಿ, ಗುರಿ, ಕಾರ್ಯತಂತ್ರದ ರಚನೆ ಮತ್ತು ಉದ್ದೇಶಗಳನ್ನು ಹೊಂದಿರುವ ಯಾವುದೇ ಇತರ ಸಂಸ್ಥೆ ಅಥವಾ ಸಂಸ್ಥೆಗಳೊಂದಿಗಿನ ಸಹಭಾಗಿತ್ವ, ಸಹಯೋಗ, ಸಹಕಾರ, ಸಹ–ಪಾಲುದಾರಿಕೆ, ಕಾರ್ಯತಂತ್ರ ಅಥವಾ ಪರಸ್ಪರ ಅನುಕೂಲಕರವಾದಂಥ ಯಾವುದೇ ವಿಧಾನದಿಂದ ವಿಶ್ವವಿದ್ಯಾಲಯದ ಬೋಧಕ ವೃಂದ (ಫ್ಯಾಕಲ್ಟಿ), ಸಂಶೋಧಕರು ಮತ್ತು ಪೂರಕ ಸಿಬ್ಬಂದಿಯ ಸುಧಾರಣೆ ಮತ್ತು ತರಬೇತಿಗಾಗಿ, ಕಾರ್ಯಕ್ರಮಗಳನ್ನು ಪ್ರಾರಂಭಿಸುವುದು ಮತ್ತು ಕೈಗೊಳ್ಳುವುದು;

(vii) ಯಾವುದೇ ಸಂಸ್ಥೆಯೊಂದಿಗೆ ಜೊತೆಗೂಡಿ ಸಂಶೋಧನೆಯನ್ನು ನಡೆಸುವುದು ಮತ್ತು ಸಮರ್ಥನೆಗೊಳಿಸುವುದು.

(viii) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದಕ್ಕಾಗಿ ಮತ್ತು ಉತ್ತೇಜಿಸುವುದಕ್ಕಾಗಿ ಅವಶ್ಯಕವಾದ ಮತ್ತು ಯುಕ್ತವಾದ ಕ್ರಮಗಳನ್ನು ಕೈಗೊಳ್ಳುವುದು;

(ix) ಶಿಕ್ಷಣ ಮತ್ತು ಇತರ ಅಭಿವೃದ್ಧಿ ವಲಯಗಳನ್ನು ವಿಸ್ತರಿಸುವುದಕ್ಕಾಗಿ ಸರ್ಕಾರವು ಅನುಮೋದಿಸಬಹುದಾದಂತೆ ಯಾವುವೇ ಧ್ಯೇಯೋದ್ದೇಶಗಳನ್ನು ಕೈಗೊಳ್ಳುವುದು.

**8. ವಿಶ್ವವಿದ್ಯಾಲಯದ ಅಧಿಕಾರಗಳು.**– ವಿಶ್ವವಿದ್ಯಾಲಯವು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗೆ ಅನುಸಾರವಾಗಿ ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿರ್ಧರಿಸಬಹುದಾದ ಅಂಥ ಕ್ಯಾಂಪಸ್ಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಕರ್ನಾಟಕದಲ್ಲಿ ಸ್ಥಾಪಿಸುವುದು ಮತ್ತು ನಿರ್ವಹಿಸುವುದು;

(ii) ವಿಶ್ವವಿದ್ಯಾಲಯದ ಉದ್ದೇಶವನ್ನು ಕಾರ್ಯರೂಪಕ್ಕೆ ತರುವಲ್ಲಿ ಅಗತ್ಯವಾಗಬಹುದಾದ ಅಥವಾ ಕಾರ್ಯಸಾಧ್ಯವಾಗಬಹುದಾದ ಎಲ್ಲಾ ಅಂಥ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು;

(iii) ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಮತ್ತು ಷರತ್ತುಗಳಿಗೊಳಪಟ್ಟು ಪದವಿಗಳು ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರದಾನಮಾಡುವುದು;

(iv) ಪರಿನಿಯಮಗಳನ್ವಯ ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿ ವೇತನಗಳು ಮತ್ತು ಬಹುಮಾನಗಳು, ಅವಾರ್ಡುಗಳು, ಪಾರಿತೋಷಕಗಳು ಇತ್ಯಾದಿಗಳನ್ನು ಸ್ಥಾಪಿಸುವುದು ಮತ್ತು ನೀಡುವುದು;

(v) ಪರಿನಿಯಮಗಳಲ್ಲಿ ಅಥವಾ ಸಂದರ್ಭಾನುಸಾರವಾಗಿ ನಿಯಮಗಳಲ್ಲಿ ನಿಗದಿಪಡಿಸಬಹುದಾದ ಅಂಥ ಶುಲ್ಕಗಳು, ಬಿಲ್ಲುಗಳು, ಖರೀದಿ ಪಟ್ಟಿಗಳನ್ನು ಕೇಳಿಪಡೆದುಕೊಳ್ಳುವುದು ಮತ್ತು ಸ್ವೀಕರಿಸುವುದು ಹಾಗೂ ಚಾರ್ಜುಗಳನ್ನು ವಸೂಲು ಮಾಡುವುದು;

(vi) ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಪಠ್ಯೇತರ ಚಟುವಟಿಕೆಗಳಿಗೆ ಅವಕಾಶಗಳನ್ನು ಕಲ್ಪಿಸುವುದು;

(vii) ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಕ್ಯಾಂಪಸುಗಳ, ಪ್ರಾದೇಶಿಕ ಕೇಂದ್ರಗಳ, ಅಧ್ಯಯನ ಕೇಂದ್ರಗಳ ಬೋಧಕ ಸಿಬ್ಬಂದಿ (ಫ್ಯಾಕಲ್ಟಿ), ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವುದು;

(viii) ವಿಶ್ವವಿದ್ಯಾಲಯದ ಅಥವಾ ಒಂದು ಘಟಕ ಕಾಲೇಜಿನ ಅಥವಾ ಕ್ಯಾಂಪಸ್ಸಿನ, ಪ್ರಾದೇಶಿಕ ಕೇಂದ್ರದ, ಅಧ್ಯಯನ ಕೇಂದ್ರದ ಉದ್ದೇಶಕ್ಕಾಗಿ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದಿರುವ, ಯಾವುದೇ ರೀತಿಯ ಸ್ವಯಂ ದೇಣಿಗೆಗಳು ಮತ್ತು ಕೊಡುಗೆಗಳನ್ನು ಸ್ವೀಕರಿಸುವುದು ಮತ್ತು ಸಂಘದ ಮತ್ತು ದತ್ತಿಯ ಸ್ವತ್ತುಗಳೂ ಸೇರಿದಂತೆ, ಯಾವುದೇ ಚರ ಅಥವಾ ಸ್ಥಿರ ಸ್ವತ್ತನ್ನು ಆರ್ಜಿಸುವುದು, ಹೊಂದಿರುವುದು, ನಿರ್ವಹಿಸುವುದು, ನಡೆಸುವುದು ಮತ್ತು ಹಸ್ತಾಂತರ ಮಾಡುವುದು;

(ix) ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸುವುದು ಹಾಗೂ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ ವಿದ್ಯಾರ್ಥಿಗಳಿಗೆ ವಸತಿ ಸ್ಥಳಗಳನ್ನು ಗುರುತು ಮಾಡುವುದು;

(x) ವಸತಿಯ ಮೇಲ್ವಿಚಾರಣೆ ಮಾಡುವುದು ಮತ್ತು ನಿಯಂತ್ರಣ ಮಾಡುವುದು ಹಾಗೂ ವಿದ್ಯಾರ್ಥಿಗಳು ಮತ್ತು ಎಲ್ಲಾ ಪ್ರವರ್ಗಗಳ ಸಿಬ್ಬಂದಿಗಳಲ್ಲಿ ಶಿಸ್ತು ನಿಯಂತ್ರಣ ಮಾಡುವುದು ಮತ್ತು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ನಡತೆ ಸಂಹಿತೆಯನ್ನು ರೂಪಿಸುವುದೂ ಒಳಗೊಂಡಂತೆ, ಅಂಥ ಸಿಬ್ಬಂದಿಗಳ ಸೇವಾಷರತ್ತುಗಳನ್ನು ನಿರೂಪಿಸುವುದು;

(xi) ಶೈಕ್ಷಣಿಕ, ಆಡಳಿತ ಮತ್ತು ಬೆಂಬಲ ಸಿಬ್ಬಂದಿಯ ಹುದ್ದೆಗಳನ್ನು ಮತ್ತು ಇತರ ಆವಶ್ಯಕ ಹುದ್ದೆಗಳನ್ನು ಸೃಜಿಸುವುದು;

(xii) ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನಿರ್ಧರಿಸಬಹುದಾದ ಅಂಥ ರೀತಿಯಲ್ಲಿ ಮತ್ತು ಅಂಥ ಉದ್ದೇಶಗಳಿಗಾಗಿ ಇತರ ವಿಶ್ವವಿದ್ಯಾಲಯಗಳೊಡನೆ ಸಹಕರಿಸುವುದು ಮತ್ತು ಸಹಯೋಗವನ್ನು ಹೊಂದುವುದು;

(xiii) ಶಿಕ್ಷಕರಿಗೆ, ಪಾಠಗಳನ್ನು ರಚಿಸುವವರಿಗೆ, ಮೌಲ್ಯಮಾಪಕರಿಗೆ ಮತ್ತು ಇತರ ಶೈಕ್ಷಣಿಕ ಸಿಬ್ಬಂದಿಗೆ ಪುನರ್ಮನನ ವ್ಯಾಸಂಗಕ್ರಮಗಳು, ಅಭಿಮುಖ ವ್ಯಾಸಂಗ ಕ್ರಮಗಳು, ಕಾರ್ಯಾಗಾರಗಳು, ವಿಚಾರಗೋಷ್ಠಿಗಳು ಮತ್ತು ಇತರ ಕಾರ್ಯಕ್ರಮಗಳನ್ನು ಏರ್ಪಡಿಸುವುದು ಮತ್ತು ನಡೆಸುವುದು;

(xiv) ಶೈಕ್ಷಣಿಕ ಪರಿಷತ್ತಿನ ಅನುಮೋದನೆಯೊಂದಿಗೆ ವಿಶ್ವವಿದ್ಯಾಲಯಕ್ಕೆ ಅಥವಾ ಘಟಕ ಕಾಲೇಜಿಗೆ, ಪ್ರಾದೇಶಿಕ ಕೇಂದ್ರಗಳಿಗೆ, ಅಧ್ಯಯನ ಕೇಂದ್ರಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮತ್ತು ಈ ಅಧಿನಿಯಮದಲ್ಲಿ ಕಲ್ಪಿಸಿದ ವ್ಯಾಪ್ತಿಗಿಂತ ಕಡಿಮೆಯಿಲ್ಲದಂತೆ ಕರ್ನಾಟಕದ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮಾನಕ ಗುಣಮಟ್ಟಗಳನ್ನು ನಿರ್ಧರಿಸುವುದು;

(xv) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಕಾರ್ಯರೂಪಕ್ಕೆ ತರಲು ಅವಶ್ಯವಾಗಬಹುದಾದಂಥ ಇತರ ಎಲ್ಲಾ ಕ್ರಮಗಳನ್ನು ಅಥವಾ ಕಾರ್ಯಗಳನ್ನು, ಅವು ಮೇಲೆ ಹೇಳಿದ ಅಧಿಕಾರಗಳಿಗೆ ಪ್ರಾಸಂಗಿಕವಾಗಿರಲಿ ಅಥವಾ ಇಲ್ಲದಿರಲಿ, ಕೈಗೊಳ್ಳುವುದು;

(xvi) ಪರೀಕ್ಷೆಗಳ ಆಧಾರದ ಮೇಲೆ ಅಥವಾ ಸರ್ಕಾರದಿಂದ ಅನುಮೋದಿತವಾದ ಇತರ ಯಾವುದೇ ಮೌಲ್ಯಮಾಪನ ವಿಧಾನದ ಆಧಾರದ ಮೇಲೆ ನೀಡಲು ಪದವಿಗಳು, ಡಿಪ್ಲೋಮಾಗಳು, ಪ್ರಮಾಣಪತ್ರಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಸ್ಥಾಪಿಸುವುದು;

(xvii) ಫಿಲಂಗಳು, ಕ್ಯಾಸೆಟ್‌ಗಳು, ಧ್ವನಿಸುರುಳಿಗಳು, ದೃಶ್ಯಸುರುಳಿಗಳು, ಸಿ.ಡಿ., ವಿ.ಸಿ.ಡಿ. ಮತ್ತು ಇತರ ತಂತ್ರಾಂಶಗಳೂ ಹಾಗೂ ಇತರ ಸಂಬಂಧಿತ ವಿದ್ಯುನ್ಮಾನ ಮತ್ತು ಮುದ್ರಣ ಮಾಧ್ಯಮವೂ ಸೇರಿದಂತೆ ಬೋಧಕ ಸಾಮಗ್ರಿಗಳನ್ನು ತಯಾರಿಸುವುದಕ್ಕಾಗಿ ಅವಕಾಶ ಕಲ್ಪಿಸುವುದು;

(xviii) ಪ್ರಬಂಧಕ ಮಂಡಳಿಯ ಅನುಮೋದನೆಯೊಡನೆ ವಿಶ್ವವಿದ್ಯಾಲಯದ ಉದ್ದೇಶಗಳಿಗಾಗಿ ವಿಶ್ವವಿದ್ಯಾಲಯದ ಸ್ವತ್ತುಗಳನ್ನು ಭದ್ರತೆಯಾಗಿ ನೀಡಿ ಅಥವಾ ನೀಡದೆ ಹಣವನ್ನು ಪಡೆಯುವುದು, ಸಂಗ್ರಹಿಸುವುದು, ಚಂದಾದಾರರಾಗುವುದು ಮತ್ತು ಸಾಲ ಪಡೆಯುವುದು;

(xix) ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುವೇ ಇತರ ಶೈಕ್ಷಣಿಕ ಸಂಸ್ಥೆಗಳ ಆಡಳಿತವನ್ನು ಪಡೆದುಕೊಳ್ಳುವುದು, ವಹಿಸಿಕೊಳ್ಳುವುದು ಮತ್ತು ನಡೆಸುವುದು;

(xx) ವ್ಯವಸ್ಥಾಪನಾ ಮಂಡಳಿಯ ಪೂರ್ವಾನುಮೋದನೆಯೊಂದಿಗೆ ಸ್ವತ್ತುಗಳನ್ನು ಆರ್ಜಿಸುವುದು;

(xxi) ವಿಶ್ವವಿದ್ಯಾಲಯದ ಮೇಲಿನ ಉದ್ದೇಶಗಳಿಗೆ ಸಂಬಂಧಿಸಿದ ಅಥವಾ ಪ್ರಾಸಂಗಿಕವಾದ ಯಾವುದೇ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು.

**9. ವಿಶ್ವವಿದ್ಯಾಲಯವು ಎಲ್ಲಾ ವರ್ಗಗಳು, ಜಾತಿಗಳು, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲರಿಗೂ ಮುಕ್ತವಾಗಿರತಕ್ಕದ್ದು.**– ವಿಶ್ವವಿದ್ಯಾಲಯದ ಪ್ರವೇಶಗಳು ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲಾ ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು. ಎಲ್ಲಾ ಪ್ರವೇಶಗಳನ್ನು ಅರ್ಹತಾ ಪರೀಕ್ಷೆಗಳಲ್ಲಿನ ಅರ್ಹತೆಯ ಆಧಾರದ ಮೇಲೆ ಮಾಡತಕ್ಕದ್ದು:

ಪರಂತು, ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳ ಪ್ರವೇಶದಲ್ಲಿ ಶೇಕಡಾ ನಲವತ್ತರಷ್ಟನ್ನು ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ಮೀಸಲಿಡತಕ್ಕದ್ದು ಮತ್ತು ಪ್ರವೇಶಗಳನ್ನು ರಾಜ್ಯ ಸರ್ಕಾರವು ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡತಕ್ಕದ್ದು ಮತ್ತು ಸೀಟುಗಳನ್ನು ಅರ್ಹತೆ ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ರೂಪಿಸುವ ಮೀಸಲಾತಿ ನೀತಿಗೆ ಅನುಸಾರವಾಗಿ ಹಂಚಿಕೆ ಮಾಡತಕ್ಕದ್ದು:

ಮತ್ತು ಪರಂತು, ಯಾವುದೇ ಕೋರ್ಸಿನಲ್ಲಿ ಹತ್ತಕ್ಕಿಂತ ಕಡಿಮೆ ಸೀಟುಗಳು ಇರುವಲ್ಲಿ, ಸ್ನಾತಕೋತ್ತರ ಇಂಥ ಕೋರ್ಸುಗಳನ್ನು ಒಟ್ಟಿಗೆ ಒಂದುಗೂಡಿಸುವ ಮೂಲಕ ಮೀಸಲಿಡತಕ್ಕದ್ದು ಮತ್ತು ಯಾವುದೇ ಕೋರ್ಸಿನಲ್ಲಿ ಮೂರು ಸೀಟುಗಳಿಗಿಂತ ಕಡಿಮೆ ಇರುವಲ್ಲಿ, ಅವುಗಳನ್ನು ಸುತ್ತು ಸರದಿಯಲ್ಲಿ ಮೀಸಲಿಡತಕ್ಕದ್ದು.

**10. ರಾಷ್ಟ್ರೀಯ ಅಧಿಮಾನ್ಯತೆ.**– ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಆದಷ್ಟು ಬೇಗನೆ ಸಂಬಂಧಪಟ್ಟ ಶಾಸನಾತ್ಮಕ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳಿಂದ ಅಧಿಮಾನ್ಯತೆಯನ್ನು ಕೋರತಕ್ಕದ್ದು ಮತ್ತು ಖಾಸಗಿ ವಿಶ್ವವಿದ್ಯಾಲಯಗಳು ನಡೆಸುವ ಎಲ್ಲಾ ಕೋರ್ಸುಗಳು ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ವಿನಿಯಮಗಳಿಗೆ ಅನುಸಾರವಾಗಿ ಇರತಕ್ಕದ್ದು.

**11. ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು.**– ಪ್ರಾಯೋಜಕ ಸಂಸ್ಥೆಯು ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದಂತೆ ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಇವುಗಳಲ್ಲಿ ಪ್ರತಿಯೊಂದನ್ನು ಪ್ರಾಯೋಜಕ ಸಂಸ್ಥೆಯು ತನ್ನ ವಿವೇಚನಾನುಸಾರ ಚಲಾಯಿಸಬಹುದು, ಎಂದರೆ:–

(i) ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಪುನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(ii) ವಿಶ್ವವಿದ್ಯಾಲಯದ ಪ್ರಥಮ ಪ್ರಬಂಧಕ ಮಂಡಳಿಯನ್ನು ರಚಿಸುವುದು;

(iii) ಪ್ರಬಂಧಕ ಮಂಡಳಿಯ ಅಧ್ಯಕ್ಷರನ್ನು ನಾಮನಿರ್ದೇಶಿಸುವುದು;

(iv) ಪ್ರಬಂಧಕ ಮಂಡಳಿಯ ಸದಸ್ಯರಾಗಿ ಮೂರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(v) ವ್ಯವಸ್ಥಾಪನಾ ಮಂಡಳಿಯ ಸದಸ್ಯರಾಗಿ ಇಬ್ಬರು ವ್ಯಕ್ತಿಗಳನ್ನು ನಾಮ ನಿರ್ದೇಶಿಸುವುದು;

(vi) ವಿಶ್ವವಿದ್ಯಾಲಯದ ದತ್ತಿ ನಿಧಿಗೆ ದೇಣಿಗೆ ನೀಡಲು ನಿಧಿ ಮೂಲಗಳನ್ನು ನಿರ್ಧರಿಸುವುದು;

(vii) ವಿಶ್ವವಿದ್ಯಾಲಯದ ಹಣದ ವಿನಿಯೋಗ ಮತ್ತು ವೆಚ್ಚ ಮಾಡುವುದನ್ನು ನಿರ್ಧರಿಸುವುದು;

(viii) ಪ್ರಬಂಧಕ ಮಂಡಳಿಯ ಸಭೆಯಲ್ಲಿಯ ಯಾವುವೇ ವಿವಾದಗಳನ್ನು ಈ ಅಧಿನಿಯಮದಲ್ಲಿ ಉಪಬಂಧಿಸಿರುವ ವಿಧಾನದಲ್ಲಿ ಬಗೆಹರಿಸುವುದು;

## ಅಧ್ಯಾಯ – III

## ವಿಶ್ವವಿದ್ಯಾಲಯದ ಅಧಿಕಾರಿಗಳು

**12. ವಿಶ್ವವಿದ್ಯಾಲಯದ ಅಧಿಕಾರಿಗಳು.**– ಈ ಮುಂದಿನವರು ವಿಶ್ವವಿದ್ಯಾಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:–

(i) ಸಂದರ್ಶಕರು;

(ii) ಸಹ–ಸಂದರ್ಶಕರು;

(iii) ಕುಲಾಧಿಪತಿಗಳು;

(iv) ಕುಲಪತಿಗಳು;

(v) ಸಹಕುಲಪತಿಗಳು;

(vi) ಕುಲಸಚಿವರು;

(vii) ಹಣಕಾಸು ಅಧಿಕಾರಿ;

(viii) ಡೀನ್;

(ix) ಕುಲಸಚಿವರು ಮೌಲ್ಯಮಾಪನ; ಮತ್ತು

(x) ಪರಿನಿಯಮಗಳ ಮೂಲಕ ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಘೋಷಿಸಬಹುದಾದ ಅಂಥ ಇತರ ಅಧಿಕಾರಿಗಳು.

**13. ಸಂದರ್ಶಕರು.**– (1) ಕರ್ನಾಟಕದ ಘನತೆವೆತ್ತ ರಾಜ್ಯಪಾಲರು ವಿಶ್ವವಿದ್ಯಾಲಯದ ಸಂದರ್ಶಕರಾಗಿರತಕ್ಕದ್ದು ಮತ್ತು ಸಂದರ್ಶಕರು ವಿಶ್ವವಿದ್ಯಾಲಯದ ಕಾರ್ಯನಿರ್ವಹಣೆಯ ಸುಧಾರಣೆಗಾಗಿ ಸಲಹೆಗಳನ್ನು ನೀಡಬಹುದು.

(2) ಸಂದರ್ಶಕರು, ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಸಂದರ್ಶಕರು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ವ್ಯವಹಾರಗಳಿಗೆ ಸಂಬಂಧಿಸಿದಂತೆ, ಯಾವುದೇ ಪತ್ರ ಅಥವಾ ಮಾಹಿತಿಯನ್ನು ತರಿಸಿಕೊಳ್ಳುವುದು;

(ii) ಸಂದರ್ಶಕರು, ಅವರು ಸ್ವೀಕರಿಸಿದ ಮಾಹಿತಿಯ ಆಧಾರದ ಮೇಲೆ ವಿಶ್ವವಿದ್ಯಾಲಯಗಳ ಯಾವುದೇ ಪ್ರಾಧಿಕಾರವು ಮಾಡಿದ ಯಾವುದೇ ಆದೇಶ, ನಡೆಸಿದ ವ್ಯವಹರಣೆಗಳು ಅಥವಾ ಕೈಗೊಂಡ ತೀರ್ಮಾನಗಳು, ಈ ಅಧಿನಿಯಮಕ್ಕೆ, ವಿನಿಯಮಗಳಿಗೆ ಅಥವಾ ನಿಯಮಗಳಿಗೆ ಪೂರಕವಾಗಿಲ್ಲವೆಂದು ಮನಗಂಡರೆ ಅವರು ವಿಶ್ವವಿದ್ಯಾಲಯದ ಹಿತಾಸಕ್ತಿಯಿಂದ ತಾವು ಸೂಕ್ತವೆಂದು ಭಾವಿಸಬಹುದಾದ ಅಂಥ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಹಾಗೆ ಹೊರಡಿಸಿದ ನಿರ್ದೇಶನಗಳನ್ನು ಸಂಬಂಧಪಟ್ಟವರೆಲ್ಲರೂ ಪಾಲಿಸತಕ್ಕದ್ದು.

**14. ಸಹ–ಸಂದರ್ಶಕರು.**– (1) ಕರ್ನಾಟಕ ಸರ್ಕಾರದ ಮಾನ್ಯ ಉನ್ನತ ಶಿಕ್ಷಣ ಸಚಿವರು ವಿಶ್ವವಿದ್ಯಾಲಯದ ಸಹ–ಸಂದರ್ಶಕರಾಗಿರತಕ್ಕದ್ದು.

(2) ಸಂದರ್ಶಕರ ಅನುಪಸ್ಥಿತಿಯಲ್ಲಿ ಸಹ–ಸಂದರ್ಶಕರು ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**15. ಕುಲಾಧಿಪತಿಗಳು.**– (1) ಕುಲಾಧಿಪತಿಯವರನ್ನು ಪ್ರಾಯೋಜಕ ಸಂಸ್ಥೆಯು ನೇಮಿಸತಕ್ಕದ್ದು.

(2) ಪ್ರಾಯೋಜಕ ಸಂಸ್ಥೆಯ ಸಂಸ್ಥಾಪಿತ ನ್ಯಾಸಧಾರಿಯು ಮೊದಲನೇ ಕುಲಾಧಿಪತಿಗಳಾಗಿರತಕ್ಕದ್ದು, ಅವರು ತಮ್ಮ ಜೀವನಪರ್ಯಂತ ಅಥವಾ ಅವರು ತಮ್ಮ ಪದವನ್ನು ಬಿಟ್ಟುಕೊಡುವವರೆಗೆ ಕುಲಾಧಿಪತಿಗಳಾಗಿ ಪದಧಾರಣ ಮಾಡಿರತಕ್ಕದ್ದು.

(3) ತದನಂತರದ ಕುಲಾಧಿಪತಿಗಳು, ಅಂಥ ನೇಮಕಾತಿಯನ್ನು ಪರಿಗಣಿಸುವ ಸಂದರ್ಭದಲ್ಲಿ ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ, ಪ್ರಾಯೋಜಕ ಸಂಸ್ಥೆಯ ನ್ಯಾಸಧಾರಿಯಾಗಿರತಕ್ಕದ್ದು ಅಥವಾ ಶಿಕ್ಷಣ, ವಿಜ್ಞಾನ, ಸಂಸ್ಕೃತಿ ಅಥವಾ ಸಾರ್ವಜನಿಕ ಜೀವನ ಕ್ಷೇತ್ರಗಳಲ್ಲಿ ರಾಷ್ಟ್ರೀಯ ಮಟ್ಟದ ಛಾಪನ್ನು ಪಡೆದಿರುವ ಅಂಥ ಇತರ ವ್ಯಕ್ತಿಯಾಗಿರತಕ್ಕದ್ದು.

(4) ಹಾಗೆ ನೇಮಕಗೊಂಡ ತದನಂತರದ ಕುಲಾಧಿಪತಿಗಳು ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ಪದಧಾರಣ ಮಾಡತಕ್ಕದ್ದು.

(5) ಕುಲಾಧಿಪತಿಗಳು ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳ ಅಡಿಯಲ್ಲಿ ಅವರಿಗೆ ಪ್ರದಾನ ಮಾಡಬಹುದಾದ ಅಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು, ಅವುಗಳಲ್ಲಿ ಈ ಮುಂದಿನ ಅಧಿಕಾರಗಳು ಒಳಗೊಂಡಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುವುದು;

(ii) ಸಂದರ್ಶಕರ ಮತ್ತು ಸಹ–ಸಂದರ್ಶಕರಿಬ್ಬರ ಗೈರುಹಾಜರಿಯಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಘಟಿಕೋತ್ಸವಗಳಲ್ಲಿ ಅಧ್ಯಕ್ಷತೆಯನ್ನು ವಹಿಸುವುದು;

(iii) ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವುದು;

(iv) ಈ ಅಧಿನಿಯಮ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಅನುಸಾರವಾಗಿ ಕುಲಪತಿಗಳನ್ನು ನೇಮಿಸುವುದು ಅಥವಾ ಮನರ್ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(v) ಈ ಅಧಿನಿಯಮದ 16ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ನಾಮನಿರ್ದೇಶಕ ಸಮಿತಿಯ ಸದಸ್ಯರಾಗಿ ಒಬ್ಬ ವ್ಯಕ್ತಿಯನ್ನು ನಾಮನಿರ್ದೇಶನ ಮಾಡುವುದು;

(vi) ಸಹಕುಲಪತಿಗಳು, ಡೀನ್, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿಗಳ ನೇಮಕಾತಿಯನ್ನು ಪೂರ್ವಾನುಮೋದಿಸುವುದು;

(vii) ಪ್ರಬಂಧಕ ಮಂಡಳಿಯ ಸದಸ್ಯರನ್ನಾಗಿ ಇಬ್ಬರು ಶಿಕ್ಷಣ ತಜ್ಞರನ್ನು ನಾಮನಿರ್ದೇಶಿಸುವುದು;

(viii) ಮೊದಲ ಸಹಕುಲಪತಿಗಳು ಮತ್ತು ಹಣಕಾಸು ಅಧಿಕಾರಿಗಳನ್ನು ನೇಮಿಸುವುದು;

(ix) ಮೊದಲ ವ್ಯವಸ್ಥಾಪನಾ ಮಂಡಳಿ, ಹಣಕಾಸು ಸಮಿತಿ, ಸಂಶೋಧನಾ ಪರಿಷತ್ತು ಹಾಗೂ ಶೈಕ್ಷಣಿಕ ಪರಿಷತ್ತುಗಳನ್ನು ರಚಿಸುವುದು;

(x) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ ಕಾರ್ಯಸೂಚಿ ವಿಷಯಗಳನ್ನು ಪೂರ್ವಾನುಮೋದಿಸುವುದು;

(xi) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ (ಪ್ರಬಂಧಕ ಮಂಡಳಿಯ ಸಭೆಯಲ್ಲಿ ಉಂಟಾದ ವಿವಾದಗಳನ್ನು ಹೊರತುಪಡಿಸಿ) ವಿವಾದಗಳನ್ನು ಪರಿಹರಿಸುವುದು.

(6) ಪದಾಧಿಕಾರಿ ಅಥವಾ ಸಂಸ್ಥೆ ಮತ್ತು ವಿಶ್ವವಿದ್ಯಾಲಯದ ಯಾವುದೇ ಇತರ ಪದಾಧಿಕಾರಿ ಅಥವಾ ಸಂಸ್ಥೆಗಳ ನಡುವೆ ವಿವಾದಗಳು ಉಂಟಾದಲ್ಲಿ, ಆ ವಿವಾದವನ್ನು ಕುಲಾಧಿಪತಿಯವರ ಪರ್ಯಾಲೋಚನೆಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿವಾದದ ಸಂದರ್ಭದಲ್ಲಿ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**16. ಕುಲಪತಿಗಳು.–** (1) (2)ನೇ ಉಪಪ್ರಕರಣದ ಉಪಬಂಧಗಳಿಗೆ ಅನುಸಾರವಾಗಿ ನಾಮನಿರ್ದೇಶಕ ಸಮಿತಿಯು ಶಿಫಾರಸ್ಸು ಮಾಡಿದ ಮೂರು ವ್ಯಕ್ತಿಗಳ ಪೈಕಿಯಿಂದ ಒಬ್ಬರನ್ನು ಮೂರು ವರ್ಷಗಳ ಅವಧಿಗಾಗಿ ಕುಲಪತಿಗಳನ್ನಾಗಿ, ಪರಿನಿಯಮಗಳಲ್ಲಿ ನಿಯಮಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರು ನೇಮಿಸತಕ್ಕದ್ದು. ಮೂರು ವರ್ಷಗಳ ಅವಧಿಯು ಮುಗಿದ ತರುವಾಯ, ಇದನ್ನು ಮೂರು ವರ್ಷಗಳ ಮತ್ತೊಂದು ಅವಧಿಗೆ ನವೀಕರಿಸಬಹುದು:

ಪರಂತು, ಕುಲಪತಿಯವರು, ತಮ್ಮ ಅವಧಿ ಮುಗಿದ ನಂತರವೂ ಹೊಸ ಕುಲಪತಿಯವರು ಸೇರಿಕೊಳ್ಳುವವರೆಗೆ ಪದದಲ್ಲಿ ಮುಂದುವರೆಯತಕ್ಕದ್ದು. ಆದಾಗ್ಯೂ ಈ ಅವಧಿಯು ಯಾವುದೇ ಸಂದರ್ಭದಲ್ಲಿ ಒಂದು ವರ್ಷವನ್ನು ಮೀರತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಹೇಳಿರುವ ನಾಮನಿರ್ದೇಶಕ ಸಮಿತಿಯಲ್ಲಿ ಈ ಮುಂದಿನ ವ್ಯಕ್ತಿಗಳು ಇರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು ನಾಮನಿರ್ದೇಶಿಸಿದ ಒಬ್ಬ ವ್ಯಕ್ತಿ;

(ii) ಪ್ರಬಂಧಕ ಮಂಡಳಿಯ ಇಬ್ಬರು ನಾಮ ನಿರ್ದೇಶಿತರು, ಇವರಲ್ಲಿ ಒಬ್ಬರನ್ನು ಪ್ರಬಂಧಕ ಮಂಡಳಿಯು ಸಮಿತಿಯ ಸಂಚಾಲಕರೆಂದು ನಾಮನಿರ್ದೇಶಿಸತಕ್ಕದ್ದು.

(3) ನಾಮನಿರ್ದೇಶಕ ಸಮಿತಿಯು, ಅರ್ಹತೆಯ ಆಧಾರದ ಮೇಲೆ ಕುಲಪತಿಯ ಹುದ್ದೆಗೆ ಸೂಕ್ತವಾದ ಮೂರು ವ್ಯಕ್ತಿಗಳ ಹೆಸರನ್ನು ಶಿಫಾರಸ್ಸು ಮಾಡತಕ್ಕದ್ದು ಮತ್ತು ಅದನ್ನು ಪ್ರತಿಯೊಬ್ಬ ವ್ಯಕ್ತಿಯ ವಿದ್ಯಾರ್ಹತೆ ಮತ್ತಿತರ ವಿಶಿಷ್ಟ ಪ್ರಶಸ್ತಿಗಳನ್ನು ತಿಳಿಸುವ ಒಂದು ಸಂಕ್ಷಿಪ್ತ ವರದಿಯೊಂದಿಗೆ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು.

(4) ಕುಲಪತಿಯವರು ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಹಣಾ ಮತ್ತು ಶೈಕ್ಷಣಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣವನ್ನು ಚಲಾಯಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯದ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೊಳಿಸತಕ್ಕದ್ದು:

ಪರಂತು, ಶಿಕ್ಷಕರ ನೇಮಕಾತಿಯನ್ನು ಹೊರತುಪಡಿಸಿ ಕೂಡಲೇ ಕ್ರಮವನ್ನು ಕೈಗೊಳ್ಳಬೇಕಾದ ತುರ್ತು ಸ್ವರೂಪದ ಯಾವುದೇ ಇತರ ವಿಷಯಗಳಲ್ಲಿ ಮತ್ತು ಅದನ್ನು ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ವಿಶ್ವವಿದ್ಯಾಲಯವು ಇದಕ್ಕಾಗಿ ಅಧಿಕೃತಗೊಳಿಸಿದ್ದ ಯಾವೊಬ್ಬ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ಇತರ ಸಂಸ್ಥೆಯು ಕೂಡಲೇ ಕ್ರಮಕೈಗೊಳ್ಳುವುದು ಸಾಧ್ಯವಿರದಿರುವಾಗ ಕುಲಪತಿಯವರು ತಾನು ಸೂಕ್ತವೆಂದು ಭಾವಿಸಬಹುದಾದಂತಹ ಕ್ರಮವನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆದು ಕೈಗೊಳ್ಳತಕ್ಕದ್ದು.

(5) ಕುಲಪತಿಯವರು ಪರಿನಿಯಮಗಳು ಅಥವಾ ನಿಯಮಗಳಲ್ಲಿ ಹೇಳಲಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು:

ಪರಂತು, ಕುಲಪತಿಗಳ ಅಭಿಪ್ರಾಯದಲ್ಲಿ, ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಯಾವುದೇ ನಿರ್ಣಯವು, ಈ ಅಧಿನಿಯಮ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳು, ವಿನಿಯಮಗಳು ಅಥವಾ ನಿಯಮಗಳ ಮೂಲಕ ಪ್ರದತ್ತವಾದ ಅಧಿಕಾರದ ಹೊರಗಿದ್ದರೆ ಅಥವಾ ವಿಶ್ವವಿದ್ಯಾಲಯದ ಹಿತಾಸಕ್ತಿಗೆ ಪ್ರತಿಕೂಲವಾಗಬಹುದಾಗಿದ್ದರೆ, ಅದರ ನಿರ್ಣಯದ ದಿನಾಂಕದಿಂದ ಹದಿನೈದು ದಿನಗಳ ಒಳಗೆ ತನ್ನ ನಿರ್ಣಯವನ್ನು ಪರಿಷ್ಕರಿಸಲು ಸಂಬಂಧಪಟ್ಟ ಪ್ರಾಧಿಕಾರವನ್ನು ಆತನು ಕೋರತಕ್ಕದ್ದು ಮತ್ತು ಪ್ರಾಧಿಕಾರವು ಅಂಥ ನಿರ್ಣಯವನ್ನು ಸಂಪೂರ್ಣವಾಗಿ ಅಥವಾ ಭಾಗಶ:ವಾಗಿ ಪರಿಷ್ಕರಿಸಲು ನಿರಾಕರಿಸಿದ ಸಂದರ್ಭದಲ್ಲಿ ಅಥವಾ ಹದಿನೈದು ದಿನಗಳೊಳಗೆ ಯಾವುದೇ ನಿರ್ಣಯವನ್ನು ತೆಗೆದುಕೊಳ್ಳಲು ವಿಫಲವಾದಲ್ಲಿ, ನಂತರ ಅಂಥ ವಿಷಯವನ್ನು ಕುಲಾಧಿಪತಿಗಳಿಗೆ ಕಳುಹಿಸತಕ್ಕದ್ದು ಮತ್ತು ಈ ಬಗ್ಗೆ ಇವರ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

(6) ಕುಲಪತಿಯವರ ಸೇವೆಗಳನ್ನು, ಪ್ರಬಂಧಕ ಮಂಡಳಿಯ ಅನುಮೋದನೆಯೊಂದಿಗೆ ಮತ್ತು ಸಹಜ ನ್ಯಾಯದ ತತ್ವಗಳನ್ನು ಅನುಸರಿಸಿದ ನಂತರ ಹಾಗೂ ಶಿಸ್ತಿನ ಆಧಾರದ ಮೇಲೆ ಅಂತ್ಯಗೊಳಿಸುವ ಸಂದರ್ಭವೂ ಸೇರಿದಂತೆ, ಪ್ರಕರಣದ ಬಗ್ಗೆ ಕುಲಪತಿಯು ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡಿದ ತರುವಾಯ, ಕುಲಾಧಿಪತಿಯವರು ಅಂತ್ಯಗೊಳಿಸಬಹುದು.

(7) ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಸಂದರ್ಶಕರು, ಸಹ–ಸಂದರ್ಶಕರು ಮತ್ತು ಕುಲಾಧಿಪತಿಯವರು ಇವರುಗಳ ಗೈರು ಹಾಜರಿಯ ಸಂದರ್ಭದಲ್ಲಿ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**17. ಸಹಕುಲಪತಿಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಮೂರು ಜನರನ್ನು ಮೀರದಂತೆ ಸಹಕುಲಪತಿಗಳನ್ನು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**18. ವ್ಯಾಸಂಗ ವಿಭಾಗಗಳ ಡೀನ್‌ಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಪರಿನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವ್ಯಾಸಂಗ ವಿಭಾಗಗಳ ಡೀನ್‌ಗಳನ್ನು ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**19. ಕುಲಸಚಿವರು.–** (1) ಕುಲಾಧಿಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರ ಲಿಖಿತ ಅನುಮೋದನೆಯೊಂದಿಗೆ, ಕುಲಸಚಿವರನ್ನು ನೇಮಕ ಮಾಡತಕ್ಕದ್ದು.

(2) ಪರಿನಿಯಮಗಳಲ್ಲಿ ಪರಿಭಾಷಿಸಿರುವಂಥ ಎಲ್ಲಾ ಕರಾರುಗಳನ್ನು ವಿಶ್ವವಿದ್ಯಾಲಯದ ಪರವಾಗಿ ಕುಲಸಚಿವರು ಮಾಡಿಕೊಳ್ಳತಕ್ಕದ್ದು ಮತ್ತು ಅದಕ್ಕೆ ಸಹಿ ಹಾಕತಕ್ಕದ್ದು.

(3) ಕುಲಸಚಿವರು ವಿಶ್ವವಿದ್ಯಾಲಯದ ಪರವಾಗಿ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಪರಿನಿಯಮಗಳಿಂದ ಪ್ರದತ್ತಗೊಳಿಸಬಹುದಾದಂಥ ಅಥವಾ ಕುಲಾಧಿಪತಿಯವರು ಮತ್ತು ಕುಲಪತಿಯವರು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು ವಿಶ್ವವಿದ್ಯಾಲಯದ ದಾಖಲೆಗಳು ಮತ್ತು ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು, ಕುಲಪತಿಯವರು ಅಥವಾ ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಅಂಥ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿತಕ್ಕದ್ದು.

**20. ಹಣಕಾಸು ಅಧಿಕಾರಿ.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು, ಪರಿನಿಯಮಗಳ ಮೂಲಕ ಪ್ರದತ್ತಗೊಳಿಸಬಹುದಾದ ಅಂಥ ವಿಧಾನದಲ್ಲಿ ಹಣಕಾಸು ಅಧಿಕಾರಿಯನ್ನು ನೇಮಕ ಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**21. ಇತರ ಅಧಿಕಾರಿಗಳು.–** ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ ನೇಮಕಾತಿಯ ವಿಧಾನ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಕರ್ತವ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ – IV

## ವಿಶ್ವವಿದ್ಯಾಲಯದ ಪ್ರಾಧಿಕಾರಗಳು

**22. ವಿಶ್ವವಿದ್ಯಾಲಯದ ಪ್ರಾಧಿಕಾರಗಳು.–** ಈ ಮುಂದಿನವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:–

(i) ಪ್ರಬಂಧಕ ಮಂಡಳಿ;

(ii) ವ್ಯವಸ್ಥಾಪನ ಮಂಡಳಿ;

(iii) ಶೈಕ್ಷಣಿಕ ಪರಿಷತ್ತು;

(iv) ಸಂಶೋಧನಾ ಪರಿಷತ್ತು;

(v) ಹಣಕಾಸು ಸಮಿತಿ; ಮತ್ತು

(vi) ವಿಶ್ವವಿದ್ಯಾಲಯದ ಪ್ರಾಧಿಕಾರಗಳೆಂದು ಪರಿನಿಯಮಗಳ ಮೂಲಕ ಘೋಷಿಸಬಹುದಾದ ಅಂಥ ಇತರ ಪ್ರಾಧಿಕಾರಗಳು.

**23. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು.–** (1) ಪ್ರಬಂಧಕ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು – ಅಧ್ಯಕ್ಷರು;

(ii) ಕುಲಪತಿಯವರು – ಸದಸ್ಯರು;

(iii) ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(iv) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(v) ರಾಜ್ಯ ಸರ್ಕಾರವು ನಾಮ ನಿರ್ದೇಶನ ಮಾಡಿದ ಆಡಳಿತವನ್ನು ಒಳಗೊಂಡಂತೆ ವ್ಯವಸ್ಥಾಪನೆ, ಹಣಕಾಸು ಅಥವಾ ಯಾವುದೇ ಇತರ ವಿಶೇಷ ಕ್ಷೇತ್ರದಲ್ಲಿನ ಒಬ್ಬರು ತಜ್ಞರು;

(vi) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಇಬ್ಬರು ವ್ಯಕ್ತಿಗಳು ಅವರ ಪೈಕಿ ಒಬ್ಬರು ಮಹಿಳೆಯಾಗಿರತಕ್ಕದ್ದು;

(vii) ಸಹ ಕುಲಪತಿಯವರು ಮತದಾನದ ಹಕ್ಕಿಲ್ಲದ ಸದಸ್ಯರಾಗಿರತಕ್ಕದ್ದು;

(viii) ವಿಶ್ವವಿದ್ಯಾಲಯ ಅನುದಾನ ಆಯೋಗದ ನಾಮನಿರ್ದೇಶಿತ ಒಬ್ಬ ಸುಪ್ರಸಿದ್ಧ ಶಿಕ್ಷಣ ತಜ್ಞರು.

(2) ಕುಲಸಚಿವರು ಪ್ರಬಂಧಕ ಮಂಡಳಿಯ ಮತ ದಾನದ ಹಕ್ಕಿರದ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ಪ್ರಬಂಧಕ ಮಂಡಳಿಯ ಸದಸ್ಯರ ಪದಾವಧಿ, ಸರ್ಕಾರದಿಂದ ನಾಮನಿರ್ದೇಶಿತರಾದ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ನೇಮಕಾತಿ, ನವೀಕರಣ ಮತ್ತು ತೆಗೆದುಹಾಕುವುದು ಮುಂತಾದವುಗಳು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಾಧಿಪತಿಯವರು ಯಾವಾಗಲೂ ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರ ಗೈರುಹಾಜರಿಯಲ್ಲಿ ಕುಲಾಧಿಪತಿಯವರಿಂದ ನಾಮನಿರ್ದೇಶಿತರಾದ ಯಾರಾದರೂ ಒಬ್ಬರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು. ಅಂಥ ಸಭೆಯ ಅಧ್ಯಕ್ಷತೆಯನ್ನು ವಹಿಸುವುದಕ್ಕೆ ಕುಲಾಧಿಪತಿಯವರು ಯಾವೊಬ್ಬ ವ್ಯಕ್ತಿಯನ್ನೂ ನಾಮನಿರ್ದೇಶನ ಮಾಡಿರದಿದ್ದಲ್ಲಿ, ಸಭೆಯಲ್ಲಿ ಹಾಜರಿರುವ ಸದಸ್ಯರು ಸರಳ ಬಹುಮತದ ಮೂಲಕ ಅವರುಗಳ ಪೈಕಿಯಿಂದಲೇ ಆ ಸಭೆಯ ಅಧ್ಯಕ್ಷನನ್ನು ಚುನಾಯಿಸತಕ್ಕದ್ದು.

(5) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಿಗೆ, ಅಂಥ ಸಭೆಯಲ್ಲಿ ಹಾಜರಿದ್ದು ನೀಡುವ ಮೂರು ಜನ ಸದಸ್ಯರು ಗಣಪೂರ್ತಿ (ಕೋರಂ) ಆಗಿರತಕ್ಕದ್ದು:

ಪರಂತು, ಪ್ರಬಂಧಕ ಮಂಡಳಿಯ ಯಾವುದೇ ಸಭೆಯ ಕೋರಂ ಪೂರ್ಣವಾಗಬೇಕಾದರೆ ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಿರುವುದು ಮತ್ತು ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಾಗದೇ ಇದ್ದಾಗ ಕುಲಪತಿಯವರು ಹಾಜರಿರುವುದು ಯಾವಾಗಲೂ ಅವಶ್ಯವಾಗಿರತಕ್ಕದ್ದು.

(6) ಪ್ರಬಂಧಕ ಮಂಡಳಿಯು ವಿಶ್ವವಿದ್ಯಾಲಯದ ಪ್ರಧಾನ ಪ್ರಬಂಧಕ ಸಂಸ್ಥೆಯಾಗಿರತಕ್ಕದ್ದು ಮತ್ತು ಅದು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಕಗೊಳಿಸುವುದು;

(ii) ವಿಶ್ವವಿದ್ಯಾಲಯವು ಅನುಸರಿಸಬೇಕಾದ ಕಾರ್ಯನೀತಿಗಳನ್ನು ರಚಿಸುವುದು;

(iii) ಈ ಅಧಿನಿಯಮದ ಅಥವಾ ಪರಿನಿಯಮಗಳ ಅಥವಾ ನಿಯಮಗಳ ಉಪಬಂಧಗಳಿಗೆ ಅನುಗುಣವಾಗಿ ಇರದ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ತೀರ್ಮಾನಗಳನ್ನು ಪುನರೀಕ್ಷಿಸುವುದು;

(iv) ವಿಶ್ವವಿದ್ಯಾಲಯದ ಆಯವ್ಯಯ ಮತ್ತು ವಾರ್ಷಿಕ ವರದಿಗಳನ್ನು ಅನುಮೋದಿಸುವುದು;

(v) ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸುವುದು ಅಥವಾ ಈಗಾಗಲೇ ಇರುವ ಪರಿನಿಯಮಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವುದು ಅಥವಾ ನಿರಸನಗೊಳಿಸುವುದು;

(vi) ವಿಶ್ವವಿದ್ಯಾಲಯವನ್ನು ಸ್ವಯಂಸಮಾಪನಗೊಳಿಸುವ ನಿರ್ಧಾರವನ್ನು ತೆಗೆದುಕೊಳ್ಳುವುದು;

(vii) ಸರ್ಕಾರಕ್ಕೆ ಸಲ್ಲಿಸುವ ಪ್ರಸ್ತಾವಗಳನ್ನು ಅನುಮೋದಿಸುವುದು;

(viii) ಶುಲ್ಕ ನಿಯಂತ್ರಣ ಸಮಿತಿಗೆ ಮೂವರು ಸದಸ್ಯರನ್ನು ನಾಮನಿರ್ದೇಶನ ಮಾಡುವುದು;

(ix) ವಿಶ್ವವಿದ್ಯಾಲಯದ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕೆ ಅಪೇಕ್ಷಣೀಯವೆಂದು ಕಂಡುಬರುವಂಥ ತೀರ್ಮಾನಗಳನ್ನು ಮತ್ತು ಕ್ರಮಗಳನ್ನು ಕೈಗೊಳ್ಳುವುದು.

(7) ಪ್ರಬಂಧಕ ಮಂಡಳಿಯು ಒಂದು ವರ್ಷದಲ್ಲಿ ಕನಿಷ್ಠ ಮೂರು ಸಲ ಸಭೆ ಸೇರತಕ್ಕದ್ದು.

(8) ಕಾರ್ಯಸೂಚಿ ವಿಷಯದ ಪರವಾಗಿ ಕುಲಾಧಿಪತಿಯವರು ಸಕಾರಾತ್ಮಕ ಮತದಾನವನ್ನು ಅನುಸರಿಸಿದ ಹೊರತಾಗಿ ಯಾವುದೇ ಕಾರ್ಯಸೂಚಿ ವಿಷಯಗಳ ಸಂಬಂಧದಲ್ಲಿ, ತಮ್ಮ ಸಭೆಯಲ್ಲಿ ಪ್ರಬಂಧಕ ಮಂಡಳಿಯು ಯಾವುದೇ ಗೊತ್ತುವಳಿಯನ್ನು ಹೊರಡಿಸತಕ್ಕದ್ದಲ್ಲ ಅಥವಾ ಯಾವುದೇ ನಿರ್ಧಾರವನ್ನು ಕೈಗೊಳ್ಳತಕ್ಕದ್ದಲ್ಲ.

(9) ಪ್ರಬಂಧಕ ಮಂಡಳಿಯ ಸಭೆಯ ಅಭಿಪ್ರಾಯದಲ್ಲಿ ವಿವಾದ ಉಂಟಾದ ಸಂದರ್ಭದಲ್ಲಿ, ವಿಷಯವನ್ನು ಪ್ರಾಯೋಜಕ ಸಂಸ್ಥೆಗೆ ಉಲ್ಲೇಖಿಸತಕ್ಕದ್ದು ಮತ್ತು ಅಂಥ ವಿಷಯದ ಸಂಬಂಧದಲ್ಲಿ ಪ್ರಾಯೋಜಕ ಸಂಸ್ಥೆಯ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ಮೇಲೆ ಬಂಧನಕಾರಿಯಾಗಿರತಕ್ಕದ್ದು.

**24. ವ್ಯವಸ್ಥಾಪನಾ ಮಂಡಳಿ.**- (1) ವ್ಯವಸ್ಥಾಪನಾ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಗಳು;

(ii) ಸಹಕುಲಪತಿಗಳು;

(iii) ಕುಲಸಚಿವರು;

(iv) ಪ್ರಾಯೋಜಕ ಸಂಸ್ಥೆಯ ಇಬ್ಬರು ನಾಮನಿರ್ದೇಶಿತರು;

(v) ಕುಲಾಧಿಪತಿಗಳು ನಾಮನಿರ್ದೇಶಿಸಬಹುದಾದ ವ್ಯಾಸಂಗ ವಿಭಾಗಗಳ ಇಬ್ಬರು ಡೀನ್‌ಗಳು;

(vi) ಕುಲಸಚಿವರು ಮೌಲ್ಯಮಾಪನ.

(2) ಕುಲಪತಿಯು ವ್ಯವಸ್ಥಾಪನಾ ಮಂಡಳಿಯ ಅಧ್ಯಕ್ಷನಾಗಿರತಕ್ಕದ್ದು ಮತ್ತು ರಿಜಿಸ್ಟ್ರಾರನು, ರಿಜಿಸ್ಟ್ರಾರನ ಗೈರು ಹಾಜರಿಯಲ್ಲಿ, ರಿಜಿಸ್ಟ್ರಾರ್ ಮೌಲ್ಯಮಾಪನ ಕುಲಾಧಿಪತಿಯವರ ಪೂರ್ವಾನುಮೋದನೆಯೊಂದಿಗೆ ವ್ಯವಸ್ಥಾಪನಾ ಮಂಡಳಿಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ವ್ಯವಸ್ಥಾಪನಾ ಮಂಡಳಿಯು ವಿಶ್ವವಿದ್ಯಾಲಯದ ಕಾರ್ಯನಿರ್ವಹಣಾ ಸಂಸ್ಥೆಯಾಗಿರತಕ್ಕದ್ದು. ವ್ಯವಸ್ಥಾಪನಾ ಮಂಡಳಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ವ್ಯವಸ್ಥಾಪನಾ ಮಂಡಳಿಯ ಎಲ್ಲಾ ಸಭೆಗಳಲ್ಲಿ ಯಾವಾಗಲೂ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು ಹಾಗೂ ಕುಲಪತಿಯವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೇ ಇದ್ದ ಸಂದರ್ಭದಲ್ಲಿ ಸಭೆಯಲ್ಲಿ ಹಾಜರಿರುವ ಸದಸ್ಯರು ಚುನಾಯಿಸಿದ ಯಾವುದೇ ಇತರ ಸದಸ್ಯರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ವ್ಯವಸ್ಥಾಪನಾ ಮಂಡಳಿಯ ಸಭೆಯಲ್ಲಿ ಯಾವುದೇ ವಿಷಯವನ್ನು ಕುರಿತು ವಿವಾದ ಉಂಟಾದಲ್ಲಿ ಸದರಿ ವಿಷಯವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯದ ಬಗ್ಗೆ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**25. ಶೈಕ್ಷಣಿಕ ಪರಿಷತ್ತು.**–(1) ಶೈಕ್ಷಣಿಕ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಕಾರ್ಯದರ್ಶಿಗಳು

(iv) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(v) ಕುಲಸಚಿವರು ಮೌಲ್ಯಮಾಪನ – ಸದಸ್ಯರು

(vi) ಕುಲಾಧಿಪತಿಯವರ ಒಬ್ಬ ನಾಮನಿರ್ದೇಶಿತರು – ಸದಸ್ಯರು

(2) ಶೈಕ್ಷಣಿಕ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಶೈಕ್ಷಣಿಕ ಸಂಸ್ಥೆಯಾಗಿರತಕ್ಕದ್ದು ಮತ್ತು ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಹಾಗೂ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**26. ಸಂಶೋಧನಾ ಪರಿಷತ್ತು.**– (1) ಸಂಶೋಧನಾ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಸಂಶೋಧನಾ ಸಮಿತಿಯಾಗಿರತಕ್ಕದ್ದು ಹಾಗೂ ಸಂಶೋಧನಾ ಕ್ಷೇತ್ರದ ಆದ್ಯತೆಯೂ ಒಳಗೊಂಡಂತೆ, ವಿಶ್ವವಿದ್ಯಾಲಯವು ಕೈಗೊಳ್ಳಬೇಕಾದ ಸಂಶೋಧನೆಯ ಬಗ್ಗೆ ಒಂದು ವ್ಯಾಪಕವಾದ ಪರಿಪೂರ್ಣ ಭವಿಷ್ಯದ್ ದೃಷ್ಟಿಯನ್ನು ಒದಗಿಸತಕ್ಕದ್ದು. ಈ ಪರಿಷತ್ತು, ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಮತ್ತು ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಸಂಶೋಧನಾ ಮತ್ತು ಅನ್ವೇಷಣಾ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ಸಂಶೋಧನಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಸಂಶೋಧನೆಯ ಡೀನ್ – ಕಾರ್ಯದರ್ಶಿ

(iv) ಅನ್ವೇಷಣಾ ವಿಭಾಗದ ಮುಖ್ಯಸ್ಥರು – ಸದಸ್ಯರು

(V) ಎಲ್ಲಾ ವ್ಯಾಸಂಗ ವಿಭಾಗಗಳ ಡೀನ್‌ಗಳು – ಸದಸ್ಯರು ಮತ್ತು

(vi) ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

**27. ಹಣಕಾಸು ಸಮಿತಿ.**– (1) ಹಣಕಾಸು ಸಮಿತಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು – ಅಧ್ಯಕ್ಷರು

(ii) ಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಸದಸ್ಯರು

(iv) ಹಣಕಾಸು ಅಧಿಕಾರಿ – ಕಾರ್ಯದರ್ಶಿ

(V) ಕುಲಾಧಿಪತಿಯವರ ಒಬ್ಬ ನಾಮನಿರ್ದೇಶಿತರು – ಸದಸ್ಯರು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು; ಮತ್ತು

(vii) ಕುಲಸಚಿವರು ಮೌಲ್ಯಮಾಪನ – ಸದಸ್ಯರು

(2) ಹಣಕಾಸು ಸಮಿತಿಯು ಹಣಕಾಸಿನ ವಿಷಯಗಳನ್ನು ಕೈಗೊಳ್ಳುವ ವಿಶ್ವವಿದ್ಯಾಲಯದ ಪ್ರಧಾನ ಹಣಕಾಸು ಸಂಸ್ಥೆಯಾಗಿರತಕ್ಕದ್ದು ಹಾಗೂ ಅದು ಈ ಅಧಿನಿಯಮ, ನಿಯಮಗಳು ಮತ್ತು ಪರಿನಿಯಮಗಳ ಉಪಬಂಧಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಹಣಕಾಸು ವಿಷಯಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**28. ಇತರ ಪ್ರಾಧಿಕಾರಗಳು.–** ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ರಚನೆ, ಅಧಿಕಾರಗಳು ಹಾಗೂ ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

**29. ಒಂದು ಪ್ರಾಧಿಕಾರದ ಅಥವಾ ಸಂಸ್ಥೆಯ ಸದಸ್ಯತ್ವಕ್ಕೆ ಅನರ್ಹತೆ.–** ವಿಶ್ವವಿದ್ಯಾಲಯದ ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಒಬ್ಬ ವ್ಯಕ್ತಿಯು,–

(ಎ) ಅಸ್ವಸ್ಥ ಚಿತ್ತನಾಗಿದ್ದು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿಸಲ್ಪಟ್ಟಿದ್ದರೆ;

(ಬಿ) ಅವಿಮುಕ್ತ ದಿವಾಳಿಯಾಗಿದ್ದರೆ;

(ಸಿ) ನೈತಿಕ ಅಧ:ಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದರೆ;

(ಡಿ) ಖಾಸಗಿ ಬೋಧನಾ ತರಗತಿಗಳನ್ನು ನಡೆಸುತ್ತಿದ್ದರೆ ಅಥವಾ ಸ್ವತ: ನಿರತನಾಗಿದ್ದರೆ;

(ಇ) ಯಾವುದೇ ವಿಧದಲ್ಲಿ, ಎಲ್ಲಿಯೇಯಾಗಲಿ, ಯಾವುದೇ ಪರೀಕ್ಷೆಯನ್ನು ನಡೆಸುವಲ್ಲಿ ಅನುಚಿತ ಅಭ್ಯಾಸದಲ್ಲಿ ತೊಡಗಿದ್ದಕ್ಕಾಗಿ ಅಥವಾ ಉತ್ತೇಜಿಸಿದ್ದಕ್ಕಾಗಿ ದಂಡಿತನಾಗಿದ್ದರೆ;

(ಎಫ್) ಪ್ರಾಯೋಜಿತ ಸಂಸ್ಥೆಯು ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಯಾವೊಬ್ಬ ಸದಸ್ಯನು ಆ ಪದವನ್ನು ಹೊಂದಿರುವುದಕ್ಕೆ ಅರ್ಹನಲ್ಲನೆಂದು ಲಿಖಿತದಲ್ಲಿ ಅಭಿಪ್ರಾಯ ನೀಡಿದಾಗಲೆಲ್ಲಾ,

– ಸದಸ್ಯನಾಗಿರುವುದಕ್ಕೆ ಅನರ್ಹನಾಗತಕ್ಕದ್ದು.

**30. ಖಾಲಿಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಕಾರ್ಯ ಅಥವಾ ವ್ಯವಹರಣೆಗಳು ಕೇವಲ ಅದರಲ್ಲಿ ಯಾವುದೇ ಖಾಲಿಸ್ಥಾನ ಇದೆ ಎಂಬ ಕಾರಣದಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣದಿಂದ ಮಾತ್ರವೇ ಅಸಿಂಧುವಾಗತಕ್ಕದ್ದಲ್ಲ.

**31. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು.–** (1) ಯಾವುವೇ ಕಾರ್ಯಸೂಚಿ ವಿಷಯಗಳನ್ನು ಕುಲಾಧಿಪತಿಯವರ ಪೂರ್ವಾನುಮೋದನೆಯನ್ನು ಪಡೆಯದೇ ಪ್ರಬಂಧಕ ಮಂಡಳಿಯ ಅಥವಾ ವ್ಯವಸ್ಥಾಪನಾ ಮಂಡಳಿಯ ಅಥವಾ ಯಾವುದೇ ಸಮಿತಿಯ ಸಭೆಗಳ ಕಾರ್ಯಸೂಚಿ ವಿಷಯಗಳಲ್ಲಿ ಸೇರಿಸತಕ್ಕದ್ದಲ್ಲ ಅಥವಾ ಚರ್ಚೆಗೆ ತೆಗೆದುಕೊಳ್ಳತಕ್ಕದ್ದಲ್ಲ ಅಥವಾ ತೀರ್ಮಾನಿಸತಕ್ಕದ್ದಲ್ಲ.

(2) ಈ ಅಧಿನಿಯಮದ ಯಾವುದೇ ಉಪಬಂಧಗಳನ್ನು ಪಾಲಿಸದೆ ಇರುವ ಉಲ್ಲಂಘನೆಯ ಸಂದರ್ಭದಲ್ಲಿ, ಕುಲಾಧಿಪತಿಯವರು ವಿಶ್ವವಿದ್ಯಾಲಯದ ಯಾವುದೇ ಪದಾಧಿಕಾರಿ ಅಥವಾ ಸಂಸ್ಥೆಯು ತೆಗೆದುಕೊಂಡ ಎಲ್ಲಾ ತೀರ್ಮಾನಗಳನ್ನು ವಿಪರ್ಯಯಗೊಳಿಸುವ ಮೂಲಕ ಪರಿಹಾರ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಅಧಿಕಾರವನ್ನು ಎಲ್ಲಾ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಅಂಥ ಪರಿಹಾರ ಕ್ರಮದ ಪರಿಣಾಮವಾಗಿ, ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ವಿಶ್ವವಿದ್ಯಾಲಯದ ಪದಾಧಿಕಾರಿ ಅಥವಾ ಸಂಸ್ಥೆಯು ಕೈಗೊಂಡಿದ್ದ ಎಲ್ಲಾ ಅಂಥ ಕ್ರಮಗಳು, ಮೊದಲಿನಿಂದಲೂ ಶೂನ್ಯ ಮತ್ತು ಅಕೃತ ಎಂದು ಭಾವಿಸತಕ್ಕದ್ದು ಹಾಗೂ ತತ್ಪರಿಣಾಮವಾಗಿ, ಉಪಬಂಧ ಪಾಲಿಸದೇ ಇದ್ದ ವಿಷಯ ಅಥವಾ ನಿರ್ಧಾರದ ಸಂಬಂಧದಲ್ಲಿ ಅದಕ್ಕೆ ಮುಂಚೆ ಇದ್ದ ವಸ್ತುಸ್ಥಿತಿಯೇ ಮುಂದುವರಿಯತಕ್ಕದ್ದು.

## ಅಧ್ಯಾಯ – V

## ಪರಿನಿಯಮಗಳು ಮತ್ತು ವಿನಿಯಮಗಳು

**32. ಪರಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಪರಿನಿಯಮಗಳು, ವಿಶ್ವವಿದ್ಯಾಲಯಕ್ಕೆ ಮತ್ತು ಸಿಬ್ಬಂದಿಗೆ ಸಂಬಂಧಿಸಿದ ಎಲ್ಲಾ ಅಥವಾ ಯಾವುದೇ ವಿಷಯಕ್ಕೆ ಈ ಕೆಳಗಿನಂತೆ ಉಪಬಂಧ ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಕಾರ್ಯಕಲಾಪಗಳನ್ನು ನಡೆಸುವ ಮತ್ತು ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸದಿರುವ ಸಂಸ್ಥೆಗಳ ರಚನೆಯ ಕಾರ್ಯವಿಧಾನ;

(ii) ಶಾಶ್ವತ ಶಾಸನಬದ್ಧ ದತ್ತಿ ನಿಧಿ, ವಿಶ್ವವಿದ್ಯಾಲಯ ದತ್ತಿ ನಿಧಿ, ಸಾಮಾನ್ಯ ನಿಧಿ ಹಾಗೂ ಅಭಿವೃದ್ಧಿ ನಿಧಿಗಳ ನಿರ್ವಹಣೆ;

(iii) ಕುಲಪತಿಗಳು, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರ ನೇಮಕಾತಿಯ ನಿಬಂಧನೆಗಳು ಹಾಗೂ ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಪ್ರಕಾರ್ಯಗಳು;

(iv) ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ, ಅಧ್ಯಾಪಕರ ಮತ್ತು ನೌಕರರ ನೇಮಕಾತಿ ವಿಧಾನ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(v) ವಿಶ್ವವಿದ್ಯಾಲಯ ಹಾಗೂ ಅದರ ಅಧಿಕಾರಿಗಳು, ವ್ಯಾಸಂಗ ವಿಭಾಗದ (ಫ್ಯಾಕಲ್ಟಿ) ಸದಸ್ಯರು, ನೌಕರರು ಹಾಗೂ ವಿದ್ಯಾರ್ಥಿಗಳ ನಡುವೆ ಉಂಟಾದ ವಿವಾದಗಳನ್ನು ಪರಿಹರಿಸುವ ಕಾರ್ಯವಿಧಾನ;

(vi) ವಿಭಾಗಗಳು ಮತ್ತು ವ್ಯಾಸಂಗ ವಿಭಾಗಗಳ (ಫ್ಯಾಕಲ್ಟಿಗಳ) ಸೃಜನೆ, ರದ್ದತಿ ಅಥವಾ ಪುನಾರಚನೆ;

(vii) ಇತರ ವಿಶ್ವವಿದ್ಯಾಲಯಗಳು ಅಥವಾ ಉನ್ನತ ಕಲಿಕಾ ಸಂಸ್ಥೆಗಳ ಜೊತೆಯಲ್ಲಿ ಸಹಕರಿಸಬೇಕಾದ ರೀತಿ;

(viii) ಗೌರವ ಪದವಿಗಳ ನೀಡಿಕೆಯ ಕಾರ್ಯವಿಧಾನ;

(ix) ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿವೇತನ ಮಂಜೂರಾತಿಗೆ ಸಂಬಂಧಿಸಿದ ಉಪಬಂಧಗಳು;

(x) ವಿವಿಧ ವ್ಯಾಸಂಗ ಕ್ರಮಗಳಲ್ಲಿನ ಸೀಟುಗಳ ಸಂಖ್ಯೆಗೆ ಸಂಬಂಧಿಸಿದ ಕಾರ್ಯನೀತಿಗಳು ಮತ್ತು ಅಂಥ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಕಾರ್ಯವಿಧಾನ;

(xi) ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಶುಲ್ಕಕ್ಕೆ ಸಂಬಂಧಿಸಿದ ಕಾರ್ಯನೀತಿ;

(xii) ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಉಚಿತ ಶಿಕ್ಷಣ (ಫ್ರಿಶಿಪ್), ಪದಕಗಳು ಹಾಗೂ ಬಹುಮಾನಗಳನ್ನು ಪ್ರಾರಂಭಿಸುವುದು;

(xiii) ಪ್ರಬಂಧಕ ಮಂಡಳಿಯು ನಿರ್ಧರಿಸಬಹುದಾದ ಅಥವಾ ಈ ಅಧಿನಿಯಮದ ಅಡಿಯಲ್ಲಿ ಪರಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬೇಕಾದ ಅಗತ್ಯತೆಯುಳ್ಳ ಯಾವುದೇ ಇತರ ವಿಷಯಗಳು.

**33. ಪರಿನಿಯಮಗಳ ರಚನೆ ವಿಧಾನ.–** (1) ವ್ಯವಸ್ಥಾಪನಾ ಮಂಡಳಿಯು ರಚಿಸಿದ ಮೊದಲ ಪರಿನಿಯಮಗಳನ್ನು ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ವ್ಯವಸ್ಥಾಪನಾ ಮಂಡಳಿಯು ಸಲ್ಲಿಸಿದ ಮೊದಲ ಪರಿನಿಯಮಗಳನ್ನು ಪ್ರಬಂಧಕ ಮಂಡಳಿಯು ಪರಿಗಣಿಸತಕ್ಕದ್ದು ಹಾಗೂ ತಾನು ಅವಶ್ಯವೆಂದು ಭಾವಿಸಬಹುದಾದ ಅಂಥ ಮಾರ್ಪಾಡುಗಳು, ಯಾವುದಾದರು ಇದ್ದಲ್ಲಿ, ಅವುಗಳೊಡನೆ ತನ್ನ ಅನುಮೋದನೆಯನ್ನು ನೀಡತಕ್ಕದ್ದು.

(3) ವಿಶ್ವವಿದ್ಯಾಲಯವು, ಪ್ರಬಂಧಕ ಮಂಡಳಿಯು ಅನುಮೋದಿಸಿದ ಮೊದಲ ಪರಿನಿಯಮಗಳನ್ನು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ಪ್ರಕಟಿಸತಕ್ಕದ್ದು ಮತ್ತು ತದನಂತರ ಮೊದಲ ಪರಿನಿಯಮಗಳ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**34. ಪರಿನಿಯಮಗಳ ತಿದ್ದುಪಡಿಯ ಅಧಿಕಾರ.–** ಪ್ರಬಂಧಕ ಮಂಡಳಿಯು ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸಬಹುದು ಅಥವಾ ಪರಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ಅವನ್ನು ನಿರಸನಗೊಳಿಸಬಹುದು.

**35. ವಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ವಿನಿಯಮಗಳು ಈ ಮುಂದಿನ ವಿಷಯಗಳಿಗೆ ಉಪಬಂಧಗಳನ್ನು ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ವಿದ್ಯಾರ್ಥಿ ಪಟ್ಟಿಯಲ್ಲಿ ಅವರುಗಳ ದಾಖಲಾತಿ ಹಾಗೂ ಮುಂದುವರಿಕೆ;

(ii) ವಿಶ್ವವಿದ್ಯಾಲಯದ ಎಲ್ಲಾ ಪದವಿಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ನಿಗದಿಪಡಿಸತಕ್ಕ ವ್ಯಾಸಂಗ ಕ್ರಮಗಳು;

(iii) ಪದವಿಗಳ ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರದಾನ;

(iv) ಸಂಶೋಧನಾ ವೇತನಗಳು (ಫೆಲೋಶಿಪ್), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಪದಕಗಳು ಮತ್ತು ಬಹುಮಾನಗಳನ್ನು ನೀಡಲು ಷರತ್ತುಗಳು;

(v) ಪರೀಕ್ಷೆಗಳನ್ನು ನಡೆಸುವುದು ಹಾಗೂ ಪರೀಕ್ಷೆ ನಡೆಸುವ ಸಂಸ್ಥೆಗಳು, ಪರೀಕ್ಷಕರು, ಪರೀಕ್ಷಾ ಮೇಲ್ವಿಚಾರಕರು, ಟ್ಯಾಬುಲೇಟರ್‌ಗಳು ಮತ್ತು ಮಾಡರೇಟರ್‌ಗಳ ನೇಮಕಾತಿಯ ಷರತ್ತುಗಳು ಮತ್ತು ವಿಧಾನ ಹಾಗೂ ಅವರ ಕರ್ತವ್ಯಗಳು;

(vi) ವಿಶ್ವವಿದ್ಯಾಲಯದ ಪರೀಕ್ಷೆಗಳ, ಪದವಿಗಳ ಹಾಗೂ ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರವೇಶಕ್ಕೆ ವಿಧಿಸತಕ್ಕ ಶುಲ್ಕ;

(vii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನಲ್ಲಿ ವಿದ್ಯಾರ್ಥಿಗಳ ನಿವಾಸಕ್ಕಾಗಿ ಷರತ್ತುಗಳು;

(viii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಶಿಸ್ತು ಪಾಲನೆ;

(ix) ಈ ಅಧಿನಿಯಮದ ಅಡಿಯಲ್ಲಿನ ಪರಿನಿಯಮಗಳಲ್ಲಿ ಉಪಬಂಧ ಕಲ್ಪಿಸಬಹುದಾಂಥ ಇತರ ಎಲ್ಲಾ ವಿಷಯಗಳು.

**36. ವಿನಿಯಮಗಳ ರಚನೆ ವಿಧಾನ.–** ವಿನಿಯಮಗಳನ್ನು ಶೈಕ್ಷಣಿಕ ಪರಿಷತ್ತು ರಚಿಸತಕ್ಕದ್ದು ಹಾಗೂ ವ್ಯವಸ್ಥಾಪನಾ ಮಂಡಳಿಯು ಅನುಮೋದಿಸತಕ್ಕದ್ದು.

**37. ವಿನಿಯಮಗಳ ತಿದ್ದುಪಡಿಗೆ ಅಧಿಕಾರ.–** ವ್ಯವಸ್ಥಾಪನಾ ಮಂಡಳಿಯ ಅನುಮೋದನೆಯೊಡನೆ ಶೈಕ್ಷಣಿಕ ಪರಿಷತ್ತು ಹೊಸ ವಿನಿಯಮಗಳನ್ನು ಅಥವಾ ಹೆಚ್ಚುವರಿ ವಿನಿಯಮಗಳನ್ನು ರಚಿಸಬಹುದು ಅಥವಾ ವಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ನಿರಸನಗೊಳಿಸಬಹುದು.

**38. ಶುಲ್ಕ ನಿಯಂತ್ರಣ ಸಮಿತಿ.–**(1) ಸರ್ಕಾರವು ರಚಿಸಿದ ನಿವೃತ್ತ ಸರ್ವೋಚ್ಚ ನ್ಯಾಯಾಲಯದ ಅಥವಾ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು ಮುಖ್ಯಸ್ಥರಾಗಿರುವ ಮತ್ತು ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ, ಉನ್ನತ ಶಿಕ್ಷಣ ಪ್ರಭಾರದಲ್ಲಿರುವ ಸರ್ಕಾರದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು, ವೈದ್ಯಕೀಯ ಶಿಕ್ಷಣದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು, ಒಬ್ಬ ಮಹಿಳೆಯೂ ಸೇರಿದಂತೆ ಪ್ರಬಂಧಕ ಮಂಡಳಿಯು ನಾಮನಿರ್ದೇಶಿಸಿದ ಇಬ್ಬರು ಶಿಕ್ಷಣ ತಜ್ಞರು ಇವರುಗಳನ್ನು ಒಳಗೊಂಡ ಒಂದು ಶುಲ್ಕ ನಿಯಂತ್ರಣ ಸಮಿತಿಯು, 9ನೇ

ಪ್ರಕರಣದ ಅಡಿಯಲ್ಲಿ ಕರ್ನಾಟಕದ ವಿದ್ಯಾರ್ಥಿಗಳಿಗಾಗಿ ಮೀಸಲಿರಿಸಿದ ವಿಶ್ವವಿದ್ಯಾಲಯದ ಸ್ಥಾನಗಳ ಶುಲ್ಕವನ್ನು ನಿಯಂತ್ರಿಸತಕ್ಕದ್ದು. ಸಮಿತಿಯಲ್ಲಿ ಈ ಉದ್ದೇಶಕ್ಕಾಗಿ ಒಬ್ಬರು ಖ್ಯಾತ ಚಾರ್ಟರ್ಡ್ ಅಕೌಂಟೆಂಟ್ ರವರನ್ನು ಸಹ ಸದಸ್ಯನನ್ನಾಗಿ ಸೇರಿಸಿಕೊಳ್ಳತಕ್ಕದ್ದು.

(2) ಸಮಿತಿಯು, ವಿಶ್ವವಿದ್ಯಾಲಯದ ಪ್ರವೇಶಗಳ ಮತ್ತು ಶುಲ್ಕದ ಸಂಗ್ರಹಣೆಯ ಅನುಪಾಲನೆಯನ್ನು ನೋಡಿಕೊಳ್ಳತಕ್ಕದ್ದು.

## ಅಧ್ಯಾಯ – VI

## ಸಂಕೀರ್ಣ

**39. ನೌಕರರ ಸೇವಾ ಷರತ್ತುಗಳು.–** (1) ಪರಿನಿಯಮಗಳ ಮತ್ತು ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಥವಾ ನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳು, ಯಾವುದಾದರೂ ಇದ್ದಲ್ಲಿ, ಅವುಗಳಿಗೆ ಒಳಪಟ್ಟು ಪ್ರತಿಯೊಬ್ಬ ನೌಕರನು ಲಿಖಿತ ಕರಾರಿನ ಅಡಿಯಲ್ಲಿ ನೇಮಕಗೊಳ್ಳತಕ್ಕದ್ದು ಮತ್ತು ಅದನ್ನು ವಿಶ್ವವಿದ್ಯಾಲಯದಲ್ಲಿ ಇಟ್ಟುಕೊಳ್ಳತಕ್ಕದ್ದು ಹಾಗೂ ಅದರ ಪ್ರತಿಯನ್ನು ಸಂಬಂಧಪಟ್ಟ ನೌಕರನಿಗೆ ನೀಡತಕ್ಕದ್ದು.

(2) ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಕಾರ್ಯವಿಧಾನಗಳ ಮೂಲಕ ನಿಯಂತ್ರಿಸತಕ್ಕದ್ದು.

(3) ಕರಾರಿನಿಂದಾಗಿ ವಿಶ್ವವಿದ್ಯಾಲಯ ಮತ್ತು ನೌಕರನ ಮಧ್ಯದಲ್ಲಿ ಉದ್ಭವಿಸಬಹುದಾದ ಯಾವುದೇ ವಿವಾದವನ್ನು, ಲಿಖಿತ ಕರಾರಿನಲ್ಲಿ ಉಪಬಂಧಿಸಿದ ವಿಧಾನದಲ್ಲಿ ಹಾಗೂ ಪರಿನಿಯಮಗಳ ಅನುಸಾರವಾಗಿ ಪರಿಹರಿಸತಕ್ಕದ್ದು.

**40. ಮೇಲ್ಮನವಿ ಹಕ್ಕು.–** ವಿಶ್ವವಿದ್ಯಾಲಯವು ತನ್ನ ನೌಕರರ ಅಥವಾ ವಿದ್ಯಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡ ಸಂದರ್ಭದಲ್ಲಿ, ಬಾಧಿತ ನೌಕರ ಅಥವಾ ವಿದ್ಯಾರ್ಥಿಗಳು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಅಂಥ ಪ್ರಾಧಿಕಾರಕ್ಕೆ ಮೇಲ್ಮನವಿಯನ್ನು ಸಲ್ಲಿಸುವ ಹಕ್ಕನ್ನು ಹೊಂದಿರತಕ್ಕದ್ದು.

**41. ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿ .–** ವಿಶ್ವವಿದ್ಯಾಲಯವು, ತನ್ನ ನೌಕರರ ಪ್ರಯೋಜನಕ್ಕಾಗಿ, ಪರಿನಿಯಮಗಳು ಮತ್ತು ಜಾರಿಯಲ್ಲಿರುವ ಕಾನೂನುಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿಯನ್ನು ರಚಿಸತಕ್ಕದ್ದು ಹಾಗೂ ಅಂಥ ವಿಮಾ ಯೋಜನೆಗಳನ್ನು ಒದಗಿಸತಕ್ಕದ್ದು.

**42. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಅಥವಾ ಇತರ ಸಂಸ್ಥೆಯ ಸದಸ್ಯನಾಗಿ ಯಾವೊಬ್ಬ ವ್ಯಕ್ತಿಯು ಸೂಕ್ತವಾಗಿ ಆಯ್ಕೆಯಾಗಿದ್ದಾನೆಯೇ ಅಥವಾ ನೇಮಕಗೊಂಡಿದ್ದಾನೆಯೇ ಅಥವಾ ಅದಕ್ಕೆ ಅರ್ಹನಾಗಿದ್ದಾನೆಯೇ ಎಂಬ ಯಾವುದೇ ಪ್ರಶ್ನೆ ಉದ್ಭವಿಸಿದರೆ, ಆ ವಿಷಯವನ್ನು ತೀರ್ಮಾನಕ್ಕಾಗಿ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**43. ಸಮಿತಿಗಳ ರಚನೆ.–** 22ನೇ ಪ್ರಕರಣದಲ್ಲಿ ನಮೂದಿಸಿದ ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಅಧಿಕಾರವನ್ನು ಹೊಂದಿರುವ ಅಂಥ ಸದಸ್ಯರನ್ನು ಒಳಗೊಂಡ ಅಂಥ ಪ್ರಾಧಿಕಾರದ ಒಂದು ಸಮಿತಿಯನ್ನು ರಚಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**44. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಂಸ್ಥೆಯ ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ಪೈಕಿ ಯಾವುದೇ ಸ್ಥಾನವು ಆಕಸ್ಮಿಕವಾಗಿ ಖಾಲಿಯಾದರೆ, ಯಾರ ಸ್ಥಾನವು ಖಾಲಿಯಾಗಿ ತುಂಬಬೇಕಾಗಿ ಬಂದಿದೆಯೋ ಆ ಸದಸ್ಯನನ್ನು ಯಾವ ರೀತಿಯಲ್ಲಿ ಆರಿಸಲಾಗಿತ್ತೋ ಅದೇ ರೀತಿಯಲ್ಲಿ ಹೊಸ ಸದಸ್ಯನನ್ನು ಆರಿಸಿ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ಖಾಲಿ ಸ್ಥಾನವನ್ನು ಭರ್ತಿ ಮಾಡಿದ ವ್ಯಕ್ತಿಯು ಆತನು ಯಾವ ಸದಸ್ಯನ ಸ್ಥಾನದಲ್ಲಿ ಭರ್ತಿಯಾಗಿರುವನೋ ಆ ಸದಸ್ಯನು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯನಾಗಿ ಉಳಿಯುತ್ತಿದ್ದ ಬಾಕಿ ಅವಧಿಯವರೆಗೆ ಮಾತ್ರ ಸದಸ್ಯನಾಗಿರತಕ್ಕದ್ದು.

**45. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.–** ಈ ಅಧಿನಿಯಮ ಅಥವಾ ಪರಿನಿಯಮಗಳು ಅಥವಾ ನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ವಿಶ್ವವಿದ್ಯಾಲಯದ ಯಾವೊಬ್ಬ ಅಧಿಕಾರಿ ಅಥವಾ ಇತರ ನೌಕರರ ವಿರುದ್ಧ ಯಾವುದೇ ದಾವೆ ಅಥವಾ ಇತರ ಕಾನೂನು ವ್ಯವಹರಣೆಗಳನ್ನು ನಡೆಸಲು ಅವಕಾಶ ಇರತಕ್ಕದ್ದಲ್ಲ.

**46. ತಾತ್ಕಾಲಿಕ ಉಪಬಂಧಗಳು.–** ಈ ಅಧಿನಿಯಮ ಮತ್ತು ಪರಿನಿಯಮಗಳ ಯಾವುದೇ ಇತರ ಉಪಬಂಧಗಳಲ್ಲಿ ಏನೇ ಇದ್ದರೂ,–

(i) ಮೊದಲ ಕುಲಪತಿ ಮತ್ತು ಸಹಕುಲಪತಿ, ಯಾರಾದರೂ ಇದ್ದರೆ, ಅವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(ii) ಮೊದಲ ಕುಲಸಚಿವರನ್ನು, ಮೊದಲ ಕುಲಸಚಿವರು ಮೌಲ್ಯಮಾಪನ ಮತ್ತು ಮೊದಲ ಹಣಕಾಸು ಅಧಿಕಾರಿಯವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು; ಮತ್ತು

(iii) ಮೊದಲ ವ್ಯವಸ್ಥಾಪನ ಮಂಡಳಿ, ಮೊದಲ ಹಣಕಾಸು ಸಮಿತಿ, ಮೊದಲ ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಹಾಗೂ ಮೊದಲ ಶೈಕ್ಷಣಿಕ ಪರಿಷತ್ತನ್ನು ಕುಲಾಧಿಪತಿಯವರು ರಚಿಸತಕ್ಕದ್ದು.

**47. ಶಾಶ್ವತ ಶಾಸನಬದ್ಧ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಕನಿಷ್ಠ ಇಪ್ಪತ್ತೈದು ಕೋಟಿ ರೂಪಾಯಿಗಳನ್ನುಳ್ಳ ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು ಈ ಪೈಕಿ ಕನಿಷ್ಠ ಹದಿನೈದು ಕೋಟಿ ರೂಪಾಯಿಗಳು ನಗದು ರೂಪದಲ್ಲಿ ಮತ್ತು ಇನ್ನೂಳಿದದ್ದು ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ಇರತಕ್ಕದ್ದು ಮತ್ತು ಇದನ್ನು ತಾವಾಗಿಯೇ ಹೆಚ್ಚಿಸಬಹುದಾಗಿದ್ದು ಆದರೆ ಅದಕ್ಕಿಂತ ಕಡಿಮೆ ಮಾಡತಕ್ಕದ್ದಲ್ಲ :

ಪರಂತು, ಬೆಂಗಳೂರು ಅಥವಾ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊರಗಿರುವ ವಿಶ್ವವಿದ್ಯಾಲಯದ ಸಂದರ್ಭದಲ್ಲಿ ಕನಿಷ್ಠ ಹತ್ತು ಕೋಟಿ ರೂಪಾಯಿಗಳು ನಗದು ರೂಪದಲ್ಲಿರತಕ್ಕದ್ದು ಮತ್ತು ಉಳಿದ ಐದು ಕೋಟಿ ರೂಪಾಯಿಗಳು ಬ್ಯಾಂಕ್ ಗ್ಯಾರಂಟಿಯ ರೂಪದಲ್ಲಿರತಕ್ಕದ್ದು.

(2) ವಿಶ್ವವಿದ್ಯಾಲಯವು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಹಣವನ್ನು ಹೂಡಲು ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯವು ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಗೆ ವರ್ಗಾವಣೆ ಮಾಡಬಹುದು. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನೂ ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(4) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಿದ ವರಮಾನದ ಶೇಕಡಾ ಎಪ್ಪತ್ತೈದರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತೈದರಷ್ಟನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಯಲ್ಲಿ ಪುನ: ತೊಡಗಿಸತಕ್ಕದ್ದು.

**48. ವಿಶ್ವವಿದ್ಯಾಲಯದ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ದೇಣಿಗೆಗಳು ಮತ್ತು ಕಾಲಕಾಲಕ್ಕೆ ಸ್ವೀಕರಿಸಲಾದ ಇತರ ನಿಧಿಯನ್ನು ಒಳಗೊಂಡ ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದ ಅಂಥ ನಿಧಿಯನ್ನು ಹೊಂದಿರುವ ಒಂದು ವಿಶ್ವವಿದ್ಯಾಲಯ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು.

(2) ವಿಶ್ವವಿದ್ಯಾಲಯವು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ವಿಶ್ವವಿದ್ಯಾಲಯದ ದತ್ತಿನಿಧಿಯನ್ನು ಹೂಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯ ದತ್ತಿ ನಿಧಿಯು, ವಿಶ್ವವಿದ್ಯಾಲಯವು ತನ್ನ ಸಾಮಾಜಿಕ ಧ್ಯೇಯೋದ್ದೇಶಗಳನ್ನು ನೆರವೇರಿಸುವ ಸಂದರ್ಭದಲ್ಲಿ ಮತ್ತು/ಅಥವಾ ಮುಂಗಾಣದ ಸನ್ನಿವೇಶದಲ್ಲಿ ಉದ್ಭವಿಸಬಹುದಾದ ಹಣಕಾಸು ಸವಾಲುಗಳಿಂದ ತನ್ನನ್ನು ರಕ್ಷಿಸಿಕೊಳ್ಳುವುದಕ್ಕಾಗಿ, ಸ್ವಇಚ್ಛೆಯಿಂದ ನಿರ್ವಹಿಸಿಕೊಂಡು ಬರಲು ಮತ್ತು ಜವಾಬ್ದಾರಿಯಿಂದ ಹಣ ಹೂಡಿಕೆ ಮಾಡಲು ಇಚ್ಛೆಯುಳ್ಳವರಾಗಿ ಸ್ವಯಂ ವಿಧಿಸಿಕೊಂಡ ನಿಧಿಯಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಗೆ ವರ್ಗಾಯಿಸಬಹುದು. ವಿಶ್ವವಿದ್ಯಾಲಯದ ಸಮಾಪನಗೊಳಿಸುವದನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನು ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(5) ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಬರುವ ವರಮಾನದ ಶೇಕಡಾ ಎಂಭತ್ತರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸದ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತರಷ್ಟನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**49. ಸಾಮಾನ್ಯ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಸಾಮಾನ್ಯ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯವು ವಿಧಿಸಬಹುದಾದ ಎಲ್ಲಾ ಶುಲ್ಕಗಳು;

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೆ ಇರುವ ಯಾವುದೇ ಇತರ ಮೂಲದಿಂದ ಸ್ವೀಕರಿಸಲಾದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ದೇಣಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು;

(2) ಸಾಮಾನ್ಯ ನಿಧಿಗೆ ಜಮಾ ಮಾಡುವ ನಿಧಿಗಳನ್ನು ವಿಶ್ವವಿದ್ಯಾಲಯದ ಎಲ್ಲಾ ಆವರ್ತಕ ವೆಚ್ಚಗಳನ್ನು ಭರಿಸಲು ಉಪಯೋಗಿಸಿಕೊಳ್ಳತಕ್ಕದ್ದು.

**50. ಅಭಿವೃದ್ಧಿ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಅಭಿವೃದ್ಧಿ ನಿಧಿಯನ್ನು ಸಹ ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಅಭಿವೃದ್ಧಿ ಶುಲ್ಕಗಳು;

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ವಿಶ್ವವಿದ್ಯಾಲಯದ ಅಭಿವೃದ್ಧಿಯ ಉದ್ದೇಶಗಳಿಗಾಗಿ ಯಾವುದೇ ಇತರ ಮೂಲಗಳಿಂದ ಸ್ವೀಕರಿಸಿದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ವಂತಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು; ಮತ್ತು

(v) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಲಾದ ಎಲ್ಲಾ ವರಮಾನಗಳು.

(2) ಅಭಿವೃದ್ಧಿ ನಿಧಿಗೆ ಕಾಲಕಾಲಕ್ಕೆ ಜಮಾ ಮಾಡಿದ ನಿಧಿಯನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಉಪಯೋಗಿಸಕೊಳ್ಳತಕ್ಕದ್ದು.

**51. ನಿಧಿಗಳ ನಿರ್ವಹಣೆ.–** 47, 48, 49 ಮತ್ತು 50ನೇ ಪ್ರಕರಣಗಳಡಿಯಲ್ಲಿ ಸ್ಥಾಪಿಸಲಾದ ನಿಧಿಗಳನ್ನು ಪ್ರಬಂಧಕ ಮಂಡಳಿಯ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ನಿಯಂತ್ರಿಸತಕ್ಕದ್ದು ಹಾಗೂ ನಿರ್ವಹಿಸತಕ್ಕದ್ದು.

**52. ವಾರ್ಷಿಕ ವರದಿ.–** (1) ವಿಶ್ವವಿದ್ಯಾಲಯದ ವಾರ್ಷಿಕ ವರದಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ಅದರ ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಪ್ರಬಂಧಕ ಮಂಡಳಿಯು ವಾರ್ಷಿಕ ವರದಿಯನ್ನು ತನ್ನ ಸಭೆಯಲ್ಲಿ ಪರಿಗಣಿಸತಕ್ಕದ್ದು ಹಾಗೂ ಅದನ್ನು ಮಾರ್ಪಾಡುಗಳೊಡನೆ ಅಥವಾ ಮಾರ್ಪಾಡುಗಳಿಲ್ಲದೆ ಅನುಮೋದಿಸಬಹುದು.

(3) ಪ್ರಬಂಧಕ ಮಂಡಳಿಯು ಸೂಕ್ತವಾಗಿ ಅನುಮೋದಿಸಿದ ವಾರ್ಷಿಕ ವರದಿಯ ಒಂದು ಪ್ರತಿಯನ್ನು ಪ್ರತಿವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ಡಿಸೆಂಬರ್ 31ಕ್ಕೆ ಮೊದಲು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**53. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.–** (1) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕ ಪತ್ರ ಮತ್ತು ಜಮಾ ಖರ್ಚು ಪಟ್ಟಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯಕ್ಕೆ ಎಲ್ಲಾ ಮೂಲಗಳಿಂದ ಪ್ರಾಪ್ತವಾಗುವ ಅಥವಾ ಸ್ವೀಕರಿಸಲಾಗುವ ಎಲ್ಲಾ ನಿಧಿಗಳು ಹಾಗೂ ವಿತರಿಸಿದ ಅಥವಾ ಸಂದಾಯ ಮಾಡಿದ ಎಲ್ಲಾ ಮೊಬಲಗುಗಳನ್ನು ವಿಶ್ವವಿದ್ಯಾಲಯವು ನಿರ್ವಹಿಸುವ ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕಪತ್ರಗಳನ್ನು ಪ್ರತಿ ವರ್ಷವೂ ಭಾರತದ ಚಾರ್ಟೆಡ್ ಅಕೌಂಟೆಂಟ್‌ಗಳ ಸಂಸ್ಥೆಯ ಸದಸ್ಯರಾಗಿರುವ ಒಬ್ಬ ಲೆಕ್ಕಪರಿಶೋಧಕರಿಂದ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಲೆಕ್ಕಪರಿಶೋಧನಾ ವರದಿಯೊಡನೆ, ಪ್ರತಿ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ನವೆಂಬರ್ 30ಕ್ಕೆ ಮೊದಲು ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(4) ವಾರ್ಷಿಕ ಲೆಕ್ಕಪತ್ರಗಳು, ಜಮಾಖರ್ಚು ಪಟ್ಟಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಪ್ರಬಂಧಕ ಮಂಡಳಿಯು ತನ್ನ ಸಭೆಯಲ್ಲಿ ಪರ್ಯಾಲೋಚಿಸತಕ್ಕದ್ದು ಮತ್ತು ಪ್ರಬಂಧಕ ಮಂಡಳಿಯು ಅದನ್ನು ತನ್ನ ಅಭಿಪ್ರಾಯಗಳೊಡನೆ ಸಂದರ್ಶಕರಿಗೆ ಹಾಗೂ ಸರ್ಕಾರಕ್ಕೆ ಪ್ರತಿ ವರ್ಷದ ಡಿಸೆಂಬರ್ 31 ರಂದು ಅಥವಾ ಅದಕ್ಕೆ ಮೊದಲು ಕಳುಹಿಸತಕ್ಕದ್ದು.

(5) ಲೆಕ್ಕಪರಿಶೋಧಕರ ವರದಿಯಲ್ಲಿ ಯಾವುದೇ ಮುಖ್ಯ ಬದಲಾವಣೆ ಇದ್ದ ಸಂದರ್ಭದಲ್ಲಿ, ರಾಜ್ಯ ಸರ್ಕಾರವು ವಿಶ್ವವಿದ್ಯಾಲಯಕ್ಕೆ ನಿರ್ದೇಶನಗಳನ್ನು ಹೊರಡಿಬಹುದು ಮತ್ತು ಅಂಥ ನಿರ್ದೇಶನಗಳು ವಿಶ್ವವಿದ್ಯಾಲಯದ ಮೇಲೆ ಬಂಧನಕಾರಿಯಾಗಿರತಕ್ಕದ್ದು.

**54. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಮಿತಿಯ ಯಾವುದೇ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ ಅಥವಾ ಗೊತ್ತುವಳಿಯು ಅಥವಾ ವಿಶ್ವವಿದ್ಯಾಲಯದ ಸ್ವಾಧೀನದಲ್ಲಿರುವ ಇತರ ದಾಖಲೆಗಳು ಅಥವಾ ವಿಶ್ವವಿದ್ಯಾಲಯವು ಯುಕ್ತವಾಗಿ ನಿರ್ವಹಿಸುವ ಯಾವುದೇ ರಿಜಿಸ್ಟರ್‌ನಲ್ಲಿಯ ಯಾವುದೇ ನಮೂದುಗಳ ಪ್ರತಿಯನ್ನು, ಅದರ ಮೇಲೆ ಕುಲಸಚಿವರು ಪ್ರಮಾಣೀಕರಿಸಿದ್ದರೆ, ಅದನ್ನು ಅಂಥ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ, ಗೊತ್ತುವಳಿ ಅಥವಾ ದಾಖಲೆ ಅಥವಾ ರಿಜಿಸ್ಟರ್‌ನಲ್ಲಿ ಇರುವ ನಮೂದನ್ನು ಮೇಲ್ನೋಟದ ಸಾಕ್ಷ್ಯವೆಂಬುದಾಗಿ ಸ್ವೀಕರಿಸತಕ್ಕದ್ದು ಮತ್ತು ವಿಷಯಗಳ ಸಾಕ್ಷಿಯಾಗಿ ಅಂಗೀಕರಿಸತಕ್ಕದ್ದು ಹಾಗೂ ಮೂಲ ದಾಖಲೆಗಳನ್ನೇ ಸಲ್ಲಿಸಿದ್ದರೆ ಅದನ್ನು, ದಾಖಲಿಸಿರುವ ವಿಷಯಗಳು ಮತ್ತು ವಹಿವಾಟುಗಳ ಸಾಕ್ಷ್ಯವಾಗಿ ಅಂಗೀಕರಿಸಲಾಗುತ್ತಿತ್ತೋ, ಅದೇ ರೀತಿಯಲ್ಲಿ ಇವನ್ನೂ ಸಾಕ್ಷ್ಯವಾಗಿ ಅಂಗೀಕರಿಸತಕ್ಕದ್ದು.

**55. ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ.–** ರಾಜ್ಯಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಥವಾ ಅದರಲ್ಲಿ ಇರುವ ಯಾವುವೇ ಉಪಬಂಧಗಳನ್ನು ಅಥವಾ ಅದರಡಿಯಲ್ಲಿ ರಚಿಸಿದ ಯಾವುವೇ ನಿಯಮಗಳು ಅಥವಾ ಆದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿರ್ದೇಶನ ನೀಡುವುದು ಅವಶ್ಯವೆಂದು ಅಥವಾ ಉಚಿತವೆಂದು ಅಭಿಪ್ರಾಯಪಟ್ಟಲ್ಲಿ ಅದು ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ ಅಥವಾ ಸಂದರ್ಭಾನುಸಾರವಾಗಿ ವ್ಯವಸ್ಥಾಪನಾ ಮಂಡಳಿಯು ಅಂಥ ಪ್ರತಿಯೊಂದು ನಿರ್ದೇಶನವನ್ನು ಪಾಲಿಸತಕ್ಕದ್ದು.

**56. ದಂಡಗಳು.–** (1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿತವಾದ ನಿಯಮಗಳ ಉಪಬಂಧಗಳನ್ನು ಅಥವಾ ಯಾವುದೇ ಪರೀಕ್ಷಾ ವಿಷಯಗಳನ್ನು ಅಥವಾ ಪದವಿಗಳನ್ನು ನೀಡುವುದಕ್ಕೆ ಅಥವಾ ಅಂಕಪಟ್ಟಿಗಳನ್ನು ನೀಡುವುದಕ್ಕೆ

ಸಂಬಂಧಪಟ್ಟ ವಿಷಯಗಳಲ್ಲಿ ಉಲ್ಲಂಘನೆಗಳನ್ನು ಮಾಡುವ ಯಾವೊಬ್ಬ ವ್ಯಕ್ತಿಯು, ಅಪರಾಧ ನಿರ್ಣಯವಾದ ಮೇಲೆ, ಐವತ್ತು ಸಾವಿರ ರೂಪಾಯಿಗಳಿಗೆ ಕಡಿಮೆಯಲ್ಲದ ಆದರೆ ಹತ್ತು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಆರುತಿಂಗಳ ಅವಧಿಗಿಂತ ಕಡಿಮೆಯಲ್ಲದ ಆದರೆ ಎರಡು ವರ್ಷಗಳ ಅವಧಿಯವರೆಗೆ ವಿಸ್ತರಿಸಬಹುದಾದ ಕಾರಾವಾಸದಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು ;

ಪರಂತು, ವಿಶ್ವವಿದ್ಯಾಲಯವೂ ಸಹ ಒಳಗೊಂಡಿರುವಲ್ಲಿ, ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಈ ಅಧಿನಿಯಮದ ಅಡಿಯಲ್ಲಿ ನೀಡಲಾದ ಅನುಮತಿ ಪತ್ರವನ್ನು ಹಿಂತೆಗೆದುಕೊಳ್ಳತಕ್ಕದ್ದು.

(2) ಈ ಪ್ರಕರಣದ ಅಡಿಯಲ್ಲಿಯ ದಂಡವನ್ನು ಇತರ ಯಾವುದೇ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಲಾದ ದಂಡಕ್ಕೆ ಬಾಧಕವಾಗದಂತೆ ವಿಧಿಸಬಹುದು.

**57. ಪ್ರವೇಶಿಸುವ ಮತ್ತು ಪರಿಶೋಧಿಸುವ ಅಧಿಕಾರ.–** ಈ ಉದ್ದೇಶಕ್ಕಾಗಿ, ರಾಜ್ಯಸರ್ಕಾರದಿಂದ ಪ್ರಾಧಿಕೃತಗೊಂಡ 'ಎ' ಸಮೂಹದ ಅಧಿಕಾರಿ ದರ್ಜೆಗಿಂತ ಕಡಿಮೆಇಲ್ಲದ ದರ್ಜೆಯ ಯಾವೊಬ್ಬ ಅಧಿಕಾರಿಯು, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಶನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ 37) ಅಡಿಯಲ್ಲಿ ನಿರ್ದಿಷ್ಟಪಡಿಸಿರಬಹುದಾದ ಅಂಥ ಷರತ್ತುಗಳಿಗೆ ಒಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ, ಆ ಅಧಿನಿಯಮದ 9ನೇ ಪ್ರಕರಣದ ಅಡಿಯಲ್ಲಿ ಉಪಬಂಧಿಸಲಾದಂತಹವೇ ಅಧಿಕಾರಗಳನ್ನು ಚಲಾಯಿಸಲು ಮತ್ತು ಪ್ರಕಾರ್ಯಗಳನ್ನು ನೆರವೇರಿಸಲು ಅಧಿಕೃತನಾದ ಅಧಿಕಾರಿ ಎಂಬುದಾಗಿ ಭಾವಿಸತಕ್ಕದ್ದು.

**58. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ನಿರ್ದೇಶನವನ್ನು ನೀಡುವ ಅಧಿಕಾರ.–** (1) ವಿಶ್ವವಿದ್ಯಾಲಯವು ತನ್ನ ರಚನೆ ಅಥವಾ ನಿಗಮನವನ್ನು ನಿಯಂತ್ರಿಸುವ ಕಾನೂನಿಗೆ ಅನುಸಾರವಾಗಿ ತನ್ನ ಸಮಾಪನವನ್ನು ಉದ್ದೇಶಿಸಿದ್ದಲ್ಲಿ, ಅದು ಕನಿಷ್ಠ ಆರು ತಿಂಗಳ ಲಿಖಿತ ಪೂರ್ವ ಸೂಚನೆಯನ್ನು (ನೋಟೀಸು) ಸರ್ಕಾರಕ್ಕೆ ನೀಡತಕ್ಕದ್ದು.

(2) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಈ ಕೆಳಗಿನವುಗಳ ಬಗ್ಗೆ, ಎಂದರೆ:–

(i) ಪದವಿಯನ್ನು ನೀಡುವುದಕ್ಕಾಗಿ ಬೋಧನೆಯ ಗುಣಮಟ್ಟ;

(ii) ಶಿಕ್ಷಣದ ಗುಣಮಟ್ಟ;

(iii) ಉನ್ನತ ಶಿಕ್ಷಣದ ವ್ಯಾಪಾರೀಕರಣವನ್ನು ತಡೆಗಟ್ಟುವುದು;

(iv) ಅಧಿನಿಯಮದ ಉಪಬಂಧಗಳ ಉಲ್ಲಂಘನೆಯ ಬಗ್ಗೆ, ಯಾವುದಾದರೂ ಇದ್ದಲ್ಲಿ,

– ಇವುಗಳ ಬಗ್ಗೆ ನಿಯತಕಾಲಿಕ ಪರಿವೀಕ್ಷಣೆಯನ್ನು ನಡೆಸತಕ್ಕದ್ದು ಮತ್ತು ಸರ್ಕಾರಕ್ಕೆ ವರದಿಯನ್ನು ಕಳುಹಿಸತಕ್ಕದ್ದು.

(3) ದುರ್ವ್ಯವಹರಣೆ, ದುರಾಡಳಿತ ಮತ್ತು ಅಶಿಸ್ತು ಆಗಿದೆ ಎಂಬುದನ್ನು ಗುರುತಿಸಿದರೆ, ಸರ್ಕಾರವು, ವಿಶ್ವವಿದ್ಯಾಲಯದ ಆಡಳಿತ ವರ್ಗದವರಿಗೆ ಆಡಳಿತವನ್ನು ಸರಿಪಡಿಸಬೇಕೆಂದು ನಿರ್ದೇಶನಗಳನ್ನು ನೀಡತಕ್ಕದ್ದು. ನಿಯಮಿಸಬಹುದಾದ ಅಂಥ ಅವಧಿಯೊಳಗೆ ಆ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುವ ಹಕ್ಕು ಸರ್ಕಾರದಲ್ಲಿ ನಿಹಿತವಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ವಿಧಾನವು, ಸರ್ಕಾರವು ಈ ಸಂಬಂಧದಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು:

ಪರಂತು, ವಿಶ್ವವಿದ್ಯಾಲಯವು ತನ್ನ ಕಾರಣಗಳನ್ನು ಹೇಳಿಕೊಳ್ಳಲು ಸಮಂಜಸ ಅವಕಾಶಗಳನ್ನು ನೀಡಿದ ಹೊರತು ಅಂಥ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

(5) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೋಟೀಸನ್ನು ಸ್ವೀಕರಿಸಿದ ಮೇಲೆ, ಸರ್ಕಾರವು ಸಂಬಂಧಿಸಿದ ನಿಯಂತ್ರಣಾ ಪ್ರಾಧಿಕಾರದೊಡನೆ ಸಮಾಲೋಚಿಸಿ, ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ಅಥವಾ ವ್ಯಾಸಂಗ ಕ್ರಮವನ್ನು ಪರಿಸಮಾಪನಗೊಳಿಸಲು ಉದ್ದೇಶಿಸಿದ ದಿನಾಂಕದಿಂದ, ವಿಶ್ವವಿದ್ಯಾಲಯದಲ್ಲಿ ನಿಯತ ವ್ಯಾಸಂಗ ಕ್ರಮಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕೊನೆಯ ತಂಡ (ಬ್ಯಾಚ್) ತನ್ನ ವ್ಯಾಸಂಗ ಕ್ರಮವನ್ನು ಮುಗಿಸುವವರೆಗೆ ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು.

**59. ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು.–** (1) 58ನೇ ಪ್ರಕರಣದ (5)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ಅದರ ಆಡಳಿತಾತ್ಮಕ ವೆಚ್ಚಗಳನ್ನು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿ, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಭರಿಸತಕ್ಕದ್ದು.

(2) ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ವಿಶ್ವವಿದ್ಯಾಲಯದ ವೆಚ್ಚವನ್ನು ಭರಿಸಲು 47, 48, 49 ಮತ್ತು 50ನೇ ಪ್ರಕರಣಗಳ ಅಡಿಯಲ್ಲಿ ಉಲ್ಲೇಖಿಸಲಾದ ನಿಧಿಯು ಸಾಕಷ್ಟು ಇಲ್ಲದಿದ್ದಲ್ಲಿ, ಅಂಥ ವೆಚ್ಚವನ್ನು ಸರ್ಕಾರವು, ವಿಶ್ವವಿದ್ಯಾಲಯದ ಸ್ವತ್ತುಗಳು ಮತ್ತು ಆಸ್ತಿಗಳನ್ನು ವಿಲೇ ಮಾಡುವ ಮೂಲಕ ಭರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಸಮಾಪನೆಯು ದುರ್ವ್ಯವಹರಣೆ ಅಥವಾ ದುರಾಡಳಿತದ ಕಾರಣಗಳಿಗಾಗಿ ಆಗಿದ್ದರೆ, ಸರ್ಕಾರವು ಅಂಥ ದುರ್ವ್ಯವಹಾರಕ್ಕೆ ಅಥವಾ ದುರಾಡಳಿತಕ್ಕೆ ಹೊಣೆಯಾಗಿರುವ ವ್ಯಕ್ತಿಗಳನ್ನು ಗುರುತಿಸುವ ಮತ್ತು ಅವರ ಮೇಲೆ ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ದಂಡನೆಯನ್ನು ವಿಧಿಸಲು ಸ್ವತಂತ್ರವಾಗಿರತಕ್ಕದ್ದು.

**60. ತೊಂದರೆಗಳ ನಿವಾರಣೆಗೆ ಅಧಿಕಾರ.**– (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಅಥವಾ ಆದೇಶದ ಮೂಲಕ ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಐದು ವರ್ಷಗಳು ಮುಕ್ತಾಯವಾದ ತರುವಾಯ ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಅಧಿಸೂಚನೆ ಅಥವಾ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

**61. ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ.**– (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ಹೊರಡಿಸಲಾದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಉಭಯ ಸದನಗಳು ಒಪ್ಪಿದರೆ ತದನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ದತಿಯು ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವನ್ನು ಉಂಟುಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

**ಜಿ.ಕೆ. ಬೋರೇಗೌಡ**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಶಿ7) (500 ಪ್ರತಿಗಳು)

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| ಭಾಗ-IVA | ಬೆಂಗಳೂರು, ಶನಿವಾರ, ಏಪ್ರಿಲ್ ೨೧, ೨೦೧೮ (ವೈಶಾಖ ೦೧, ಶಕ ವರ್ಷ ೧೯೪೦) | ನಂ. ೬೦೦ |
|---|---|---|
| Part-IVA | Bengaluru, Saturday, April 21, 2018 (Vyashaka 01, Shaka Varsha 1940) | No. 600 |

## ಸಂಸದೀಯ ವ್ಯವಹಾರಗಳ ಸಚಿವಾಲಯ

### ಅಧಿಸೂಚನೆ

**ಸಂಖ್ಯೆ: ಸಂವ್ಯಶಾಇ 58 ಶಾಸನ 2017, ಬೆಂಗಳೂರು, ದಿನಾಂಕ: 21-04-2018**

**ಖಾಜಾ ಬಂದಾನವಾಜ್ ವಿಶ್ವವಿದ್ಯಾಲಯ ವಿಧೇಯಕ, 2018** ಕ್ಕೆ 2018ರ ಏಪ್ರಿಲ್ ತಿಂಗಳ 19ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2018ರ ಕರ್ನಾಟಕ ಅಧಿನಿಯಮ ಸಂಖ್ಯೆ: 18 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2018ರ ಕರ್ನಾಟಕ ಅಧಿನಿಯಮ ಸಂಖ್ಯೆ: 18**

(2018ರ ಏಪ್ರಿಲ್ ತಿಂಗಳ 21ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಖಾಜಾ ಬಂದಾನವಾಜ್ ವಿಶ್ವವಿದ್ಯಾಲಯ ಅಧಿನಿಯಮ, 2018**

(2018ರ ಏಪ್ರಿಲ್ ತಿಂಗಳ ಹತ್ತೊಂಭತ್ತನೇ ದಿನಾಂಕದಂದು ರಾಜ್ಯಪಾಲರಿಂದ ಅನುಮೋದನೆಯನ್ನು ಪಡೆಯಲಾಗಿದೆ)

ವಿಜ್ಞಾನ, ಇಂಜಿನಿಯರಿಂಗ್, ತಾಂತ್ರಿಕತೆ, ಮಾನವಿಕಗಳು, ಸಮಾಜ ವಿಜ್ಞಾನಗಳು, ಶಿಕ್ಷಣ, ವ್ಯವಸ್ಥಾಪನೆ, ವಾಣಿಜ್ಯ, ಅರ್ಥಶಾಸ್ತ್ರ, ಕಾನೂನು, ವೈದ್ಯಕೀಯ, ಔಷಧ ಶಾಸ್ತ್ರ (ಫಾರ್ಮಸಿ), ಆರೋಗ್ಯ ರಕ್ಷಣಾ ಕ್ರೀಡೆಗಳು ಮತ್ತು ಮಾನವಕುಲದ ಪ್ರಗತಿಗಾಗಿ ಕೌಶಲ್ಯಗಳು ಇತ್ಯಾದಿಗಳಂಥ ಒಂದು ಅಥವಾ ಹೆಚ್ಚಿನ ಕ್ಷೇತ್ರಗಳಲ್ಲಿ ಕಲಿಕೆ, ಬೋಧನೆ, ತರಬೇತಿ, ಸಮಾಲೋಚನೆ, ಸಂಶೋಧನೆ ಮತ್ತು ಅಭಿವೃದ್ಧಿಯನ್ನು ಪ್ರೋತ್ಸಾಹಿಸಲು ಮತ್ತು ಕೈಗೊಳ್ಳಲು ಖಾಜಾ ಬಂದಾನವಾಜ್ ಎಜುಕೇಷನಲ್ ಸೊಸೈಟಿಯು ಖಾಸಗಿ ವಲಯದಲ್ಲಿ ಏಕಾತ್ಮಕ ಸ್ವರೂಪದ ಒಂದು ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸಲು ಒಂದು ಅಧಿನಿಯಮ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ವಿಜ್ಞಾನ, ಇಂಜಿನಿಯರಿಂಗ್, ತಾಂತ್ರಿಕತೆ, ಮಾನವಿಕಗಳು, ಸಮಾಜ ವಿಜ್ಞಾನಗಳು, ಶಿಕ್ಷಣ, ವ್ಯವಸ್ಥಾಪನೆ, ವಾಣಿಜ್ಯ, ಅರ್ಥಶಾಸ್ತ್ರ, ಕಾನೂನು, ವೈದ್ಯಕೀಯ, ಔಷಧ ಶಾಸ್ತ್ರ (ಫಾರ್ಮಸಿ), ಆರೋಗ್ಯ ರಕ್ಷಣಾ ಕ್ರೀಡೆಗಳು ಮತ್ತು ಮಾನವಕುಲದ ಪ್ರಗತಿಗಾಗಿ ಕೌಶಲ್ಯಗಳು ಇತ್ಯಾದಿಗಳಂಥ ಒಂದು ಅಥವಾ ಹೆಚ್ಚಿನ ಕ್ಷೇತ್ರಗಳಲ್ಲಿ ಕಲಿಕೆ, ಬೋಧನೆ, ತರಬೇತಿ, ಸಮಾಲೋಚನೆ, ಸಂಶೋಧನೆ ಮತ್ತು ಅಭಿವೃದ್ಧಿಯನ್ನು ಪ್ರೋತ್ಸಾಹಿಸಲು ಮತ್ತು ಕೈಗೊಳ್ಳಲು ಮತ್ತು ಅದಕ್ಕೆ ಸಂಬಂಧಿಸಿದ ಅಥವಾ ಅದಕ್ಕೆ ಪ್ರಾಸಂಗಿಕವಾದ ಇತರ ವಿಷಯಗಳಿಗಾಗಿ ಖಾಜಾ ಬಂದಾನವಾಜ್ ಎಜುಕೇಷನಲ್ ಸೊಸೈಟಿಯು ಖಾಸಗಿ ವಲಯದಲ್ಲಿ ಏಕಾತ್ಮಕ ಸ್ವರೂಪದ ಒಂದು ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೊಂಬತ್ತನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

## ಅಧ್ಯಾಯ – I

### ಪ್ರಾರಂಭಿಕ

**1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.–** (1) ಈ ಅಧಿನಿಯಮವನ್ನು ಖಾಜಾ ಬಂದಾನವಾಜ್ ವಿಶ್ವವಿದ್ಯಾಲಯ ಅಧಿನಿಯಮ, 2018 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. ಪರಿಭಾಷೆಗಳು.–** ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,–

(ಎ) "ಶೈಕ್ಷಣಿಕ ಪರಿಷತ್ತು (ಅಕೆಡೆಮಿಕ್ ಕೌನ್ಸಿಲ್)" ಎಂದರೆ, 26ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿಸಲಾದ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು;

(ಬಿ) "ಕಾರ್ಯಸೂಚಿ ವಿಷಯಗಳು", ಎಂದರೆ, ಪರಿನಿಯಮಗಳಲ್ಲಿ ಹೆಸರಿಸಬಹುದಾದ ಮತ್ತು ಒಂದು ಸಭೆಯಲ್ಲಿ ಆ ವಿಷಯಗಳನ್ನು ಮತ್ತು ಕಲಾಪಗಳನ್ನು ಅನುಮೋದಿಸಬಹುದೆಂದು ತಮ್ಮ ಸಮ್ಮತಿ ಸೂಚಿಸಿ ಕುಲಾಧಿಪತಿಯವರು ಮುಂಚಿತವಾಗಿಯೇ ಲಿಖಿತ ಅನುಮೋದನೆಯನ್ನು ಕೊಟ್ಟಿದ್ದಾಗ ಮಾತ್ರವೇ ಸಂದರ್ಭಾನುಸಾರ ಪ್ರಬಂಧಕರ ಮಂಡಳಿ ಅಥವಾ ವ್ಯವಸ್ಥಾಪನಾ ಮಂಡಳಿ ಅಥವಾ ಶೈಕ್ಷಣಿಕ ಪರಿಷತ್ತು ಅಥವಾ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳು ಅಥವಾ ಯಾವುದೇ ಸಮಿತಿಯವರು ಕಾರ್ಯಸೂಚಿಯಲ್ಲಿ ಸೇರಿಸಬಹುದಾದ ಅಥವಾ ಸಭೆಯಲ್ಲಿ ಚರ್ಚೆಗೆ ತೆಗೆದುಕೊಂಡು ನಿರ್ಣಯವನ್ನು ಕೊಡಬಹುದಾದ ಎಲ್ಲಾ ವಿಷಯಗಳು ಮತ್ತು ಕಲಾಪಗಳು;

(ಸಿ) "ಪ್ರಬಂಧಕರ ಮಂಡಳಿ" ಎಂದರೆ, 24ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಪ್ರಬಂಧಕರ ಮಂಡಳಿ;

(ಡಿ) "ವ್ಯವಸ್ಥಾಪನಾ ಮಂಡಳಿ" ಎಂದರೆ 25ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದಂತೆ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿ;

(ಇ) "ಕುಲಾಧಿಪತಿ", "ಸಹ–ಕುಲಾಧಿಪತಿ", "ಕುಲಪತಿ", "ಸಹಕುಲಪತಿ" ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಕುಲಾಧಿಪತಿ, ಸಹ–ಕುಲಾಧಿಪತಿ, ಕುಲಪತಿ ಮತ್ತು ಸಹಕುಲಪತಿ;

(ಎಫ್) "ಕ್ಯಾಂಪಸ್" ಎಂದರೆ, ಅದು ರಾಜ್ಯದೊಳಗೆ ಇರುವ ವಿಶ್ವವಿದ್ಯಾಲಯವು ಸ್ಥಾಪಿಸಿದ, ನಿರ್ವಹಿಸುವ ಒಂದು ಕ್ಯಾಂಪಸ್;

(ಜಿ) "ಸಮಿತಿಗಳು" ಎಂದರೆ, ಈ ಅಧಿನಿಯಮದಡಿಯಲ್ಲಿ ರೂಪಿಸಲಾದ ಸಮಿತಿಗಳು ಅಥವಾ ಸಂದರ್ಭಾನುಸಾರವಾಗಿ ವಿಶ್ವವಿದ್ಯಾಲಯದ ವಿವಿಧ ಕಾರ್ಯಕರ್ತರು ರಚಿಸಿರುವ ಸಮಿತಿಗಳು ಮತ್ತು ಅದರಲ್ಲಿ ಶೋಧನಾ ಸಮಿತಿ, ನಾಮನಿರ್ದೇಶನ ಸಮಿತಿ, ಹಣಕಾಸು ಸಮಿತಿ, ಹಣಕಾಸು ಪರಿಷತ್ತು ಮತ್ತು ಅಂಥ ಇತರ ಸಮಿತಿಗಳು ಒಳಗೊಳ್ಳುತ್ತವೆ;

(ಎಚ್) "ಘಟಕ ಕಾಲೇಜು" ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುತ್ತಿರುವ ಒಂದು ಕಾಲೇಜು ಅಥವಾ ಸಂಸ್ಥೆ;

(ಐ) "ಹಣಕಾಸು ಸಮಿತಿ" ಎಂದರೆ, 28ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಹಣಕಾಸು ಸಮಿತಿ;

(ಜೆ) "ಸರ್ಕಾರ" ಎಂದರೆ, ಕರ್ನಾಟಕ ಸರ್ಕಾರ;

(ಕೆ) "ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳು" ಎಂದರೆ, ವಿಶ್ವವಿದ್ಯಾಲಯ ಅನುದಾನ ಆಯೋಗ, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು, ರಾಷ್ಟ್ರೀಯ ಬೋಧಕ ಶಿಕ್ಷಣ ಪರಿಷತ್ತು, ಭಾರತೀಯ ವೈದ್ಯಕೀಯ ಪರಿಷತ್ತು, ಭಾರತೀಯ ಔಷಧ ವಿಜ್ಞಾನ ಪರಿಷತ್ತು, ರಾಷ್ಟ್ರೀಯ ಮೌಲ್ಯಮಾಪನ ಮತ್ತು ಅಧಿಮಾನ್ಯತಾ ಪರಿಷತ್ತು, ಭಾರತೀಯ ಕೃಷಿ ಸಂಶೋಧನಾ ಪರಿಷತ್ತು, ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಪರಿಷತ್ತು ಮತ್ತು ಸರ್ಕಾರವನ್ನು ಒಳಗೊಂಡು ಉನ್ನತ ಶಿಕ್ಷಣದಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುವಂತೆ ನೋಡಿಕೊಳ್ಳುವುದಕ್ಕಾಗಿ ಗುಣಮಟ್ಟಗಳು ಮತ್ತು ಷರತ್ತುಗಳನ್ನು ವಿಧಿಸುವುದಕ್ಕಾಗಿ, ಕೇಂದ್ರ ಸರ್ಕಾರವು ಸ್ಥಾಪಿಸಿರುವ ಒಂದು ಸಂಸ್ಥೆ;

(ಎಲ್) "ನಿಯಮಿಸಲಾದುದು" ಎಂದರೆ, ಈ ಅಧಿನಿಯಮದಡಿಯಲ್ಲಿ ಸರ್ಕಾರವು ರಚಿಸಲಾದ ನಿಯಮಗಳ ಮೂಲಕ ನಿಯಮಿಸಲಾದುದು;"

(ಎಂ) "ಒಂದು ಘಟಕ ಕಾಲೇಜಿಗೆ ಸಂಬಂಧಪಟ್ಟಂತೆ ಪ್ರಾಂಶುಪಾಲರು" ಎಂದರೆ, ಘಟಕ ಕಾಲೇಜಿನ ಮುಖ್ಯಸ್ಥರು ಮತ್ತು ಪ್ರಾಂಶುಪಾಲರು ಇಲ್ಲದಿದ್ದಲ್ಲಿ ಅಥವಾ ನೇಮಕವಾದ ಪ್ರಾಂಶುಪಾಲರ ಗೈರುಹಾಜರಿಯಲ್ಲಿ, ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ತಾತ್ಕಾಲಿಕವಾಗಿ ನೇಮಕಗೊಂಡಿರುವ ಉಪಪ್ರಾಂಶುಪಾಲರು ಅಥವಾ ಯಾವುದೇ ಇತರ ವ್ಯಕ್ತಿಯೂ ಇದರಲ್ಲಿ ಒಳಗೊಳ್ಳುತ್ತಾರೆ;

(ಎನ್) "ಕುಲಸಚಿವರು" ಎಂದರೆ, ವಿಶ್ವವಿದ್ಯಾಲಯದ ಕುಲಸಚಿವರು;

(ಒ) "ಪ್ರಾದೇಶಿಕ ಕೇಂದ್ರ" ಎಂದರೆ, ರಾಜ್ಯದೊಳಗೆ ಅಧ್ಯಯನ ಕೇಂದ್ರಗಳ ಕಾರ್ಯವನ್ನು ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ಮಾಡುವ ಉದ್ದೇಶಕ್ಕಾಗಿ ಮತ್ತು ಅಂಥ ಕೇಂದ್ರಕ್ಕೆ ಕಾರ್ಯಕಾರಿ ಪರಿಷತ್ತು ವಹಿಸಿಕೊಡಬಹುದಾದ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸುವುದಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಅಥವಾ ನಿರ್ವಹಿಸಿಕೊಂಡುಬರುವ ಒಂದು ಕೇಂದ್ರ;

(ಪಿ) "ಸೊಸೈಟಿ" ಎಂದರೆ, ಕರ್ನಾಟಕ ಸೊಸೈಟಿಗಳ ನೋಂದಣಿ ಅಧಿನಿಯಮ, 1960ರ (1960ರ ಕರ್ನಾಟಕ ಅಧಿನಿಯಮ 17) ಅಡಿಯಲ್ಲಿ ನೋಂದಾಯಿತವಾದ ಖಾಜಾ ಎಜುಕೇಷನ್ ಸೊಸೈಟಿ;

(ಕ್ಯೂ) ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ "ಪ್ರಾಯೋಜಕ ಪ್ರಾಧಿಕಾರ" ಅಥವಾ "ಪ್ರಾಯೋಜಕ ಸಂಸ್ಥೆ" ಎಂದರೆ ಪ್ರಾಯೋಜಕ ಸೊಸೈಟಿ;

(ಆರ್) "ರಾಜ್ಯ" ಎಂದರೆ, ಕರ್ನಾಟಕ ರಾಜ್ಯ;

(ಎಸ್) "ಪರಿನಿಯಮಗಳು" ಮತ್ತು "ವಿನಿಯಮಗಳು" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಅನುಕ್ರಮವಾಗಿ ವಿಶ್ವವಿದ್ಯಾಲಯದ ಪರಿನಿಯಮಗಳು ಮತ್ತು ವಿನಿಯಮಗಳು;

(ಟಿ) "ಅಧ್ಯಯನ ಕೇಂದ್ರ" ಎಂದರೆ, ವಿದ್ಯಾರ್ಥಿಗಳಿಗೆ ಅಗತ್ಯವಾದ ಬುದ್ಧಿವಾದ, ಸಲಹೆಗಳನ್ನು ನೀಡುವ ಅಥವಾ ಇತರ ಯಾವುದೇ ನೆರವನ್ನು ನೀಡುವ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವು ರಾಜ್ಯದೊಳಗೆ ಸ್ಥಾಪಿಸಿದ ಮತ್ತು ನಿರ್ವಹಿಸಿಕೊಂಡುಬಂದ ಒಂದು ಕೇಂದ್ರ;

(ಯು) "ಅಧ್ಯಾಪಕರು" ಎಂದರೆ, ಒಬ್ಬ ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಒಂದು ಘಟಕ ಕಾಲೇಜಿನಲ್ಲಿ ಬೋಧಿಸುವುದಕ್ಕೆ ಅಥವಾ ಸಂಶೋಧನೆ ನಡೆಸುವುದಕ್ಕೆ ಅಥವಾ ಸಂಶೋಧನೆಗೆ ಮಾರ್ಗದರ್ಶನ ನೀಡುವುದಕ್ಕೆ ನೇಮಕವಾದ ಅಂಥ ಇತರ ವ್ಯಕ್ತಿ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗವು ನಿರ್ದಿಷ್ಟಪಡಿಸಿದ ಗುಣಮಟ್ಟಗಳಿಗೆ ಅನುಸಾರವಾಗಿ ಇರುವ ಘಟಕ ಕಾಲೇಜಿನ ಪ್ರಾಂಶುಪಾಲರು ಇದರಲ್ಲಿ ಒಳಗೊಳ್ಳುತ್ತಾರೆ;

(ವಿ) "ವಿಶ್ವವಿದ್ಯಾಲಯ" ಎಂದರೆ, ಈ ಅಧಿನಿಯಮದಡಿಯಲ್ಲಿ ಸ್ಥಾಪಿಸಿ ನಿಗಮಿತಗೊಳಿಸಲಾದ ಖಾಜಾ ಬಂದಾನವಾಜ್ ವಿಶ್ವವಿದ್ಯಾಲಯ;

(ಡಬ್ಲ್ಯೂ) "ವಿಶ್ವವಿದ್ಯಾಲಯ ಅನುದಾನಗಳ ಆಯೋಗ" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) 4ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ಆಯೋಗ;

(ಎಕ್ಸ್) "ಸಂದರ್ಶಕರು" ಎಂದರೆ, 13ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ವಿಶ್ವವಿದ್ಯಾಲಯದ ಸಂದರ್ಶಕರು.

## ಅಧ್ಯಾಯ– II

## ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

3. ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ.– (1) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಹಕ್ಕನ್ನು ಸೊಸೈಟಿಯು ಹೊಂದಿರತಕ್ಕದ್ದು.

(2) ಸೊಸೈಟಿಯು ರಾಜ್ಯ ಸರ್ಕಾರಕ್ಕೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವವನ್ನು ಸಲ್ಲಿಸತಕ್ಕದ್ದು.

(3) ಪ್ರಸ್ತಾವವು ಈ ಮುಂದಿನ ವಿವರಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಸೊಸೈಟಿಯ ವಿವರಗಳೊಂದಿಗೆ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು;

(ii) ವಿಶ್ವವಿದ್ಯಾಲಯದ ವ್ಯಾಪ್ತಿ ಮತ್ತು ಸ್ಥಾನಮಾನ ಹಾಗೂ ಭೂಮಿಯ ಲಭ್ಯತೆ;

(iii) ಪ್ರಾರಂಭದ ದಿನಾಂಕದಿಂದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳಬೇಕೆಂದಿರುವ ಅಧ್ಯಯನ ಮತ್ತು ಸಂಶೋಧನಾ ಕಾರ್ಯಕ್ರಮಗಳ ಸ್ವರೂಪ ಮತ್ತು ಬಗೆಗಳು;

(iv) ಪ್ರಾರಂಭಿಸಬೇಕೆಂದು ಪ್ರಸ್ತಾಪಿಸಿರುವ ವ್ಯಾಸಂಗ ವಿಭಾಗಗಳು (ಫ್ಯಾಕಲ್ಟಿಗಳು), ಅಧ್ಯಯನ ಕ್ರಮಗಳು ಮತ್ತು ಸಂಶೋಧನೆಗಳ ಸ್ವರೂಪ;

(v) ಕಟ್ಟಡಗಳು, ಸಲಕರಣೆಗಳು ಮತ್ತು ರಚನಾ ಸೌಕರ್ಯಗಳನ್ನು ಒದಗಿಸುವಂಥ ಕ್ಯಾಂಪಸ್ ಅಭಿವೃದ್ಧಿ;

(vi) ಪ್ರಾರಂಭದ ದಿನಾಂಕದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಗಾಗಿ ಬಂಡವಾಳ ವೆಚ್ಚದ ಹಂತಗಳು;

(vii) ಬಾಬುವಾರು ಆವರ್ತಕ ವೆಚ್ಚ, ಆರ್ಥಿಕ ಮೂಲಗಳು ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ತಗಲುವ ಅಂದಾಜು ವೆಚ್ಚ;

(viii) ಸಂಪನ್ಮೂಲ ಸಂಗ್ರಹಣೆಗಾಗಿ ಯೋಜನೆ ಮತ್ತು ಅದಕ್ಕೆ ಬಂಡವಾಳದಿಂದ ತಗಲುವ ವೆಚ್ಚ ಹಾಗೂ ಪ್ರತಿಯೊಂದು ಮೂಲಕ್ಕೂ ಮರು ಸಂದಾಯ ಮಾಡುವ ರೀತಿ;

(ix) ವಿದ್ಯಾರ್ಥಿಗಳಿಂದ ಶುಲ್ಕ ವಸೂಲು ಮಾಡಿ ಆಂತರಿಕವಾಗಿ ನಿಧಿ ಸಂಗ್ರಹಿಸುವ ಯೋಜನೆ, ಸಲಹಾ ಸೇವೆ ಮತ್ತು ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಿಗೆ ಸಂಬಂಧಿಸಿದ ಇತರ ಚಟುವಟಿಕೆಗಳಿಂದ ನಿರೀಕ್ಷಿತ ವರಮಾನಗಳು ಮತ್ತು ಇತರ ನಿರೀಕ್ಷಿತ ವರಮಾನಗಳು;

(x) ಘಟಕವೊಂದಕ್ಕೆ ತಗಲುವ ವೆಚ್ಚದ ವಿವರಗಳು, ಆರ್ಥಿಕವಾಗಿ ದುರ್ಬಲವಾದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕ, ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿ ವೇತನದಲ್ಲಿ ನೀಡುವ ರಿಯಾಯಿತಿ ಅಥವಾ ವಿನಾಯತಿಯ ಪರಿಮಿತಿಯ ವಿವರಗಳನ್ನು ಮತ್ತು ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳಿಗೆ ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳು ಪ್ರಾಯೋಜಿಸಿದ ವಿದ್ಯಾರ್ಥಿಗಳಿಗೆ ಮತ್ತು ಭಾರತವನ್ನುಳಿದು ಇತರ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ವಿಧಿಸತಕ್ಕ ಶುಲ್ಕದ ದರಗಳು ಬೇರೆ ಬೇರೆ ಇದ್ದಲ್ಲಿ ಅವುಗಳನ್ನು ಸೂಚಿಸುವ ಶುಲ್ಕ ರಚನೆಯ ವಿವರಗಳು;

(xi) ಸಂಬಂಧಪಟ್ಟ ವಿದ್ಯಾ ವಿಭಾಗದಲ್ಲಿ ಸೊಸೈಟಿಯು ದೊರಕಿಸಿಕೊಡಲಿರುವ ವರ್ಷಗಳ ಅನುಭವ ಮತ್ತು ಪರಿಣತಿ ಹಾಗೂ ಅದರ ಹಣಕಾಸಿನ ಸಂಪನ್ಮೂಲಗಳು;

(xii) ವಿಶ್ವವಿದ್ಯಾಲಯದಲ್ಲಿರುವ ಅಧ್ಯಯನ ಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕಾಗಿ ಇರುವ ವ್ಯವಸ್ಥೆ;

(xiii) ವಿಶ್ವವಿದ್ಯಾಲಯವು ಸ್ಥಾಪನೆಯಾಗುವುದಕ್ಕೆ ಮೊದಲು ನೆರವೇರಿಸಬೇಕೆಂದು ರಾಜ್ಯ ಸರ್ಕಾರವು ಅಗತ್ಯಪಡಿಸಬಹುದಾದ ಅಂಥ ಇತರ ಷರತ್ತುಗಳ ನೆರವೇರಿಕೆಯ ಹಂತ.

(4) ಪ್ರಾಯೋಜಕ ಸೊಸೈಟಿಯಿಂದ ಸ್ವೀಕರಿಸಿದ ಪ್ರಸ್ತಾವಗಳನ್ನು ಪರೀಕ್ಷಿಸಲು ರಾಜ್ಯ ಸರ್ಕಾರವು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಪದನಿಮಿತ್ತ ಸದಸ್ಯರಾದ ಮೂರು ಸದಸ್ಯರುಗಳನ್ನು ಒಳಗೊಂಡ ಒಂದು ಶೋಧನಾ ಸಮಿತಿಯನ್ನು ರಚಿಸತಕ್ಕದ್ದು ಮತ್ತು ಅದು ವಿಶ್ವವಿದ್ಯಾಲಯದ ಸ್ಥಾಪನೆಗೆ ರಾಜ್ಯ ಸರ್ಕಾರಕ್ಕೆ ಶಿಫಾರಸ್ಸನ್ನು ಮಾಡತಕ್ಕದ್ದು.

**4. ವಿಶ್ವವಿದ್ಯಾಲಯದ ಸ್ಥಾಪನೆ.-** (1) ರಾಜ್ಯ ಸರ್ಕಾರವು ಶೋಧನಾ ಸಮಿತಿಯು ಮಾಡಿದ ಶಿಫಾರಸ್ಸುಗಳನ್ನು ಪರಿಶೀಲಿಸಿದ ತರುವಾಯ ಮತ್ತು ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ,-

(i) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ಮತ್ತು ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ (ಬಿಎಂಆರ್‌ಡಿಎ) ಮಿತಿಗಳೊಳಗೆ 25 ಎಕರೆಗಳು ಅಥವಾ ಮೈಸೂರು, ಮಂಗಳೂರು, ಹುಬ್ಬಳ್ಳಿ, ಬಳ್ಳಾರಿ, ಕಲಬುರ್ಗಿ ಮತ್ತು ಬೆಳಗಾವಿ ಮಿತಿಗಳ ನಗರಪಾಲಿಕೆಯೊಳಗೆ 35 ಎಕರೆಗಳ ಭೂಮಿ ಅಥವಾ ಇತರ ಸ್ಥಳಗಳಲ್ಲಿ 50 ಎಕರೆಗಳ ಭೂಮಿ;

ಮೇಲೆ ನಿರ್ದಿಷ್ಟಪಡಿಸಿದ ಭೂಮಿಯು ಏಕ ಘಟಕ (ಸಿಂಗಲ್ ಬ್ಲಾಕ್) ದಲ್ಲಿರತಕ್ಕದ್ದು ಮತ್ತು ಇದು ಸಂಬಂಧಪಟ್ಟ ಸೊಸೈಟಿ ಅಥವಾ ಸಂಸ್ಥೆ ಅಥವಾ ವಿಶ್ವವಿದ್ಯಾಲಯದ ಹೆಸರಿನಲ್ಲಿರತಕ್ಕದ್ದು. 3ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ಅಗತ್ಯಪಡಿಸಲಾದಂತೆ ಒದಗಿಸಿದ ವಿವರಗಳ ಆಧಾರದ ಮೇಲೆ ಸರ್ಕಾರವು 47ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಬೇಕೆಂದು ಸೊಸೈಟಿಗೆ ನಿರ್ದೇಶನ ನೀಡಬಹುದು;

(ii) ನಿರ್ದಿಷ್ಟಪಡಿಸಿದ ಶಾಸನಬದ್ಧ ನಿಧಿಗಳ ಸೃಜನೆಗಾಗಿ ಹಾಗೂ ವಿಶ್ವವಿದ್ಯಾಲಯದ ವ್ಯವಹಾರಗಳನ್ನು ನಡೆಸುವುದಕ್ಕೆ ಸಾಕಾಗುವಷ್ಟು ಹಣಕಾಸು ಸಂಪನ್ಮೂಲಗಳು; ಮತ್ತು

(iii) ಉನ್ನತ ಶಿಕ್ಷಣ ಸಂಸ್ಥೆಗಳನ್ನು ನಡೆಸುವಲ್ಲಿ ಅನುಭವ ಅಥವಾ ಪರಿಣಿತಿ,

-ಇವುಗಳನ್ನು ಹೊಂದಿರತಕ್ಕದ್ದು.

(2) ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಸ್ಥಾಪನೆಯ ತರುವಾಯ, ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, "ಖಾಜಾ ಬಂದಾನವಾಜ್ ವಿಶ್ವವಿದ್ಯಾಲಯ" ಎಂಬ ಹೆಸರಿನ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ರಾಜ್ಯದಲ್ಲಿ ಸ್ಥಾಪಿಸುವುದಕ್ಕೆ ಮಂಜೂರಾತಿಯನ್ನು ನೀಡಬಹುದು.

(3) ವಿಶ್ವವಿದ್ಯಾಲಯದ ಕೇಂದ್ರ ಕಾರ್ಯಸ್ಥಾನವು ಕಲಬುರ್ಗಿಯಲ್ಲಿ ಇರತಕ್ಕದ್ದು. ವಿಶ್ವವಿದ್ಯಾಲಯವು ತನ್ನ ಕ್ಯಾಂಪಸ್ಸುಗಳನ್ನು ಅಥವಾ ಪ್ರಾದೇಶಿಕ ಕೇಂದ್ರಗಳನ್ನು, ಅಧ್ಯಯನ ಕೇಂದ್ರಗಳನ್ನು ಕರ್ನಾಟಕದ ಯಾವುದೇ ಭಾಗದಲ್ಲಿ ಮತ್ತು ಆ ಬಗ್ಗೆ ರಾಜ್ಯ ಸರ್ಕಾರದ ಪೂರ್ವಾನುಮತಿಯನ್ನು ಪಡೆದುಕೊಳ್ಳುವುದಕ್ಕೊಳಪಟ್ಟು ಹಾಗೂ ವಿಶ್ವವಿದ್ಯಾಲಯ ಅನುದಾನಗಳ ಆಯೋಗದ ಗುಣಮಟ್ಟಗಳಿಗನುಸಾರವಾಗಿ ಹೊಂದಿರತಕ್ಕದ್ದು.

(4) ಮೊದಲ ಕುಲಾಧಿಪತಿಯವರು, ಸಹ ಕುಲಾಧಿಪತಿಯವರು, ಮೊದಲ ಕುಲಪತಿಯವರು, ಪ್ರಬಂಧಕ ಮಂಡಳಿಯ ಮೊದಲ ಸದಸ್ಯರುಗಳು, ವ್ಯವಸ್ಥಾಪನಾ ಮಂಡಳಿಯ ಹಾಗೂ ಶೈಕ್ಷಣಿಕ ಪರಿಷತ್ತಿನ ಮೊದಲ ಸದಸ್ಯರುಗಳು ಮತ್ತು ಇನ್ನು ಮುಂದೆ, ಅಂಥ ಅಧಿಕಾರಿಗಳು ಅಥವಾ ಸದಸ್ಯರುಗಳಾಗಬಹುದಾದಂಥ ಎಲ್ಲಾ ವ್ಯಕ್ತಿಗಳು, ಅಂಥ ಪದ ಅಥವಾ ಸದಸ್ಯತ್ವವನ್ನು ಹೊಂದಿರುವುದು ಮುಂದುವರೆಯುವವರೆಗೆ, ಒಂದು ನಿಗಮಿತ ನಿಕಾಯವನ್ನು ರಚಿಸತಕ್ಕದ್ದು. ಮತ್ತು ಅದು ವಿಶ್ವವಿದ್ಯಾಲಯದ ಹೆಸರಿನಲ್ಲಿ ದಾವೆ ಹೂಡಬಹುದು ಮತ್ತು ದಾವೆಗೊಳಗಾಗಬಹುದು.

(5) (2)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯವು ಸ್ಥಾಪನೆಗೆ ಮಂಜೂರಾತಿಯಾದ ಮೇಲೆ, ವಿಶ್ವವಿದ್ಯಾಲಯದ ಉದ್ದೇಶಕ್ಕಾಗಿ, ಸೊಸೈಟಿಯು ಆರ್ಜಿಸಿದ, ಸೃಜಿಸಿದ, ಏರ್ಪಾಟು ಮಾಡಿಕೊಂಡ ಅಥವಾ ಕಟ್ಟಲ್ಪಟ್ಟ ಭೂಮಿ ಮತ್ತು ಇತರ ಸ್ಥಿರ ಮತ್ತು ಚರ ಸ್ವತ್ತು, ವಿಶ್ವವಿದ್ಯಾಲಯದಲ್ಲಿ ನಿಹಿತವಾಗಿರತಕ್ಕದ್ದು.

(6) ವಿಶ್ವವಿದ್ಯಾಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದ ಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂಥ ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

(7) ವಿಶ್ವವಿದ್ಯಾಲಯದಲ್ಲಿನ ಭೂಮಿ, ಕಟ್ಟಡ ಮತ್ತು ಇತರ ಸ್ವತ್ತುಗಳನ್ನು ವಿಶ್ವವಿದ್ಯಾಲಯದ ಉದ್ದೇಶಗಳಿಗೆ ಆನುಷಂಗಿಕವಾಗಿರುವುದನ್ನು ಹೊರತುಪಡಿಸಿ ಇತರ ಯಾವುದೇ ಉದ್ದೇಶಕ್ಕಾಗಿ ಬಳಸತಕ್ಕದ್ದಲ್ಲ.

5. **ಅನುದಾನಗಳು ಮತ್ತು ಹಣಕಾಸು ನೆರವು.**- ವಿಶ್ವವಿದ್ಯಾಲಯವು ಸ್ವಂತ ಧನಮೂಲವುಳ್ಳ ಲಾಭರಹಿತ ಸಂಸ್ಥೆಯಾಗಿರತಕ್ಕದ್ದು. ರಾಜ್ಯದಿಂದ ಅಥವಾ ರಾಜ್ಯದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಇತರ ಸಂಸ್ಥೆ ಅಥವಾ ನಿಗಮದಿಂದ ಯಾವುದೇ ನಿರ್ವಹಣಾ ಸಹಾಯ ಅನುದಾನ ಅಥವಾ ಯಾವುದೇ ಹಣಕಾಸು ನೆರವನ್ನು ಹಕ್ಕಿನಿಂದ ಕೇಳತಕ್ಕದ್ದಲ್ಲ ಅಥವಾ ಅದನ್ನು ಪಡೆಯಲು ಹಕ್ಕನ್ನು ಹೊಂದಿರತಕ್ಕದ್ದಲ್ಲ:

ಪರಂತು, ರಾಜ್ಯವು,-

(ಎ) ಇತರ ರಾಜ್ಯ ಸರ್ಕಾರದ ಸಂಘಟನೆಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿರುವಂಥದ್ದೇ ಸಂಶೋಧನೆ, ಅಭಿವೃದ್ಧಿ ಮತ್ತಿತರ ಚಟುವಟಿಕೆಗಳಿಗಾಗಿ; ಅಥವಾ

(ಬಿ) ರಾಜ್ಯ ಸರ್ಕಾರದಿಂದ ನೆರವನ್ನು ಪಡೆಯುವ ಯಾವುದೇ ನಿರ್ದಿಷ್ಟ ಸಂಶೋಧನೆ ಅಥವಾ ಕಾರ್ಯಕ್ರಮಗಳಿಗಾಗಿ; ಮತ್ತು

(ಸಿ) ರಾಜ್ಯ ಕಾರ್ಯನೀತಿಯ ಬದಲಾವಣೆಗೆ ಒಳಪಟ್ಟು ಅಥವಾ ಅನ್ಯಥಾ ಇದೇ ಬಗೆಯ ವಿಶ್ವವಿದ್ಯಾಲಯಗಳಿಗೆ ಅವಕಾಶವನ್ನು ಕಲ್ಪಿಸುವುದಕ್ಕೆ ಅಥವಾ ಅವುಗಳ ಪ್ರಯೋಜನಕ್ಕಾಗಿ,

- ಅನುದಾನದ ಮೂಲಕ ಅಥವಾ ಅನ್ಯಥಾ ಹಣಕಾಸು ಬೆಂಬಲವನ್ನು ಒದಗಿಸಬಹುದು:

ಮತ್ತು ಪರಂತು, ವಿಶ್ವವಿದ್ಯಾಲಯವು, ಯಾವುದೇ ಇತರ ಮೂಲದಿಂದ ಯಾವುದೇ ಆರ್ಥಿಕ ನೆರವನ್ನು ಸ್ವೀಕರಿಸಬಹುದು.

6. **ಘಟಕ ಕಾಲೇಜು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಅಥವಾ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದಕ್ಕೆ ಅಧಿಕಾರ.**- ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಐದು ವರ್ಷಗಳನ್ನು ಪೂರ್ಣಗೊಳಿಸಿದ ನಂತರ ವಿಶ್ವವಿದ್ಯಾಲಯ ಅನುದಾನ ಆಯೋಗದ ಮತ್ತು ಇತರ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ಗುಣಮಟ್ಟಗಳಿಗೆ

ಒಳಪಟ್ಟು, ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ, ವಿಶ್ವವಿದ್ಯಾಲಯವು, ರಾಜ್ಯದಲ್ಲಿ ತನಗೆ ಸೂಕ್ತವೆನಿಸುವಂಥ ಸ್ಥಳಗಳಲ್ಲಿ ಘಟಕ ಕಾಲೇಜುಗಳು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದಿರಬಹುದು.

7. **ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು.–** ವಿಶ್ವವಿದ್ಯಾಲಯವು, ತನ್ನ ಭವಿಷ್ಯದ್‌ದೃಷ್ಟಿ ಮತ್ತು ಧ್ಯೇಯೋದ್ದೇಶಗಳನ್ನು ಸಾಧಿಸಲು ಈ ಮುಂದಿನಂತೆ ವಿವಿಧ ಬಗೆಯ ಕಾರ್ಯತಂತ್ರಗಳನ್ನು ಕೈಗೊಳ್ಳಬಹುದು:–

(i) ಮಾನವಿಕಗಳು, ಸಮಾಜ ವಿಜ್ಞಾನಗಳು, ತಾಂತ್ರಿಕ, ಆರೋಗ್ಯ, ವ್ಯವಸ್ಥಾಪನೆ, ಜೀವ ವಿಜ್ಞಾನಗಳು ಇವುಗಳಲ್ಲಿ ಮತ್ತು ಸಂಬಂಧಿತ ವಿಭಾಗಗಳಲ್ಲಿ ಸ್ನಾತಕೋತ್ತರ, ಡಾಕ್ಟೊರಲ್ ಮತ್ತು ಪೋಸ್ಟ್ ಡಾಕ್ಟೊರಲ್ ಕೋರ್ಸುಗಳಿಗೆ ಮುಂದುವರಿಯುವ ಮತ್ತು ಅವುಗಳನ್ನು ಒಳಗೊಳ್ಳುವ ವಿಶ್ವವಿದ್ಯಾಲಯ ಶಿಕ್ಷಣದಲ್ಲಿ ಪ್ರಗತಿಯನ್ನು ಮತ್ತು ಅನ್ವೇಷಣೆಯನ್ನು ಬೆಂಬಲಿಸುವುದು, ಪ್ರೋತ್ಸಾಹಿಸುವುದು ಮತ್ತು ಕೈಗೊಳ್ಳುವುದು ಹಾಗೂ ಈ ಕ್ಷೇತ್ರಗಳಲ್ಲಿ ಸಲಹೆಯನ್ನೂ ಒಳಗೊಂಡಂತೆ ಸಂಶೋಧನೆ, ಪ್ರಗತಿ ಮತ್ತು ಜ್ಞಾನ ಪ್ರಸಾರಕ್ಕೆ ಉಪಬಂಧಗಳನ್ನು ಕಲ್ಪಿಸುವುದು;

(ii) ವಿದ್ಯಾರ್ಥಿಗಳಿಗೆ, ಬೋಧಕ ವೃಂದದ (ಫ್ಯಾಕಲ್ಟಿ) ಸದಸ್ಯರಿಗೆ ಮತ್ತು ಇತರರಿಗೆ ನಿರ್ದಿಷ್ಟ ಶೈಕ್ಷಣಿಕ ಮತ್ತು ಸಂಶೋಧನಾ ಕಾರ್ಯಕ್ರಮಗಳನ್ನು, ತರಬೇತಿ ಕಾರ್ಯಕ್ರಮಗಳನ್ನು ಮತ್ತು ವಿನಿಮಯ ಕಾರ್ಯಕ್ರಮಗಳನ್ನು ಪರಿಕಲ್ಪಿಸಲು, ವಿನ್ಯಾಸಗೊಳಿಸಲು, ಅಭಿವೃದ್ಧಿಪಡಿಸಲು ಇತರ ಯಾವುದೇ ವಿಶ್ವವಿದ್ಯಾಲಯಗಳು, ಸಂಶೋಧನಾ ಸಂಸ್ಥೆಗಳು, ಲಾಭರಹಿತ ಸಂಸ್ಥೆಗಳು, ಕೈಗಾರಿಕಾ ಸಂಸ್ಥೆಗಳು, ವೃತ್ತಿಪರ ಸಂಸ್ಥೆಗಳು ಅಥವಾ ಇತರ ಸಂಸ್ಥೆಗಳೊಂದಿಗೆ ಸಹಯೋಗವನ್ನು ಹೊಂದುವುದು;

(iii) ರಾಜ್ಯ ಸರ್ಕಾರದ ಪೂರ್ವ ಅನುಮೋದನೆಯೊಡನೆ, ಯಾವುದೇ ಸಂಸ್ಥೆಯೊಂದಿಗೆ ಸಹಯೋಗ ಹೊಂದಿ ಸಂಶೋಧನೆಯನ್ನು ಮತ್ತು ಹೊಸತನವನ್ನು ಬೆಳಕಿಗೆ ತರುವುದು;

(iv) ತಾನು ಸೂಕ್ತವೆಂದು ಭಾವಿಸಬಹುದಾದಂತೆ, ಕಲಿಕೆಯ ಅಂಥ ಶಾಖೆಗಳಲ್ಲಿ ಬೋಧನಾ ಮತ್ತು ಸಂಶೋಧನಾ ಸೌಲಭ್ಯಗಳನ್ನು ಒದಗಿಸಿ ಜ್ಞಾನ ಪ್ರಸಾರ ಮಾಡುವುದು ಮತ್ತು ಅದನ್ನು ಮುಂದುವರೆಸುವುದು ಹಾಗೂ ವಿಶೇಷವಾಗಿ ತಾಂತ್ರಿಕ, ಆರೋಗ್ಯ, ವ್ಯವಸ್ಥಾಪನೆ, ಜೀವವಿಜ್ಞಾನಗಳ ಕೋರ್ಸುಗಳಲ್ಲಿ ಸಮಗ್ರ ವ್ಯಾಸಂಗ ವಿಷಯಗಳಿಗಾಗಿ ವಿಶೇಷ ಉಪಬಂಧ ಕಲ್ಪಿಸುವುದು ಮತ್ತು ವಿಶ್ವವಿದ್ಯಾಲಯದ ಅಂಥ ಇತರ ಉನ್ನತ ಶೈಕ್ಷಣಿಕ ಕಾರ್ಯಕ್ರಮಗಳಿಗಾಗಿ ಅಂತರವಿದ್ಯಾವಿಷಯಗಳ ಅಧ್ಯಯನ ಮತ್ತು ಸಂಶೋಧನೆಗೆ ಉತ್ತೇಜನ ನೀಡುವುದಕ್ಕೆ ಸೂಕ್ತ ಕ್ರಮ ಕೈಗೊಳ್ಳುವುದು;

(v) ಆಹಾರ ಪೂರೈಕೆ ಕ್ಷೇತ್ರದಿಂದ ತಾಂತ್ರಿಕ ಪರಿಹಾರಗಳವರೆಗೆ ಭವಿಷ್ಯದ ಸುಸ್ಥಿರ ತಂತ್ರಜ್ಞಾನಗಳ ಮೇಲಿನ ಸಂಶೋಧನೆಯೊಂದಿಗೆ ಉನ್ನತ ಮಟ್ಟದ ತಾಂತ್ರಿಕ ಮತ್ತು ವೃತ್ತಿಪರ ಉದ್ದಿಮೆಗಳ ಬೇಡಿಕೆಗಳನ್ನು ಈಡೇರಿಸಲು ಮಾನವ ಸಂಪನ್ಮೂಲ ಕೇಂದ್ರಗಳನ್ನು ಅಭಿವೃದ್ಧಿಗೊಳಿಸುವುದು ಹಾಗೂ ತಂತ್ರಜ್ಞಾನ ವ್ಯವಹಾರ ಮತ್ತು ತಂತ್ರಜ್ಞಾನ ಪರಿಪಕ್ವತೆಯನ್ನು ಬೆಂಬಲಿಸುವುದು;

(vi) ಉನ್ನತ ಕಲಿಕೆಗೆ ಪ್ರವೇಶಾವಕಾಶಗಳನ್ನು ಮತ್ತು ನ್ಯಾಯಸಮ್ಮತತೆಗೆ ಉತ್ತೇಜನ ನೀಡುವ ದೃಷ್ಟಿಯಿಂದ, ಕಲಿಕೆಯ ವಿಧಾನಗಳು ಮತ್ತು ಸ್ಥಳಗಳು, ವ್ಯಾಸಂಗ ಕ್ರಮಗಳ ಸಂಯೋಜನೆ, ದಾಖಲಾತಿಗಾಗಿ ಅರ್ಹತೆ, ಪ್ರವೇಶದ ವಯಸ್ಸು, ಪರೀಕ್ಷೆಯನ್ನು ನಡೆಸುವುದು ಮತ್ತು ಕಾರ್ಯಕ್ರಮಗಳ ನಿರ್ವಹಣೆಗೆ ಸಂಬಂಧಿಸಿದಂತೆ ನಮ್ಯವಾದ (ಫ್ಲೆಕ್ಸಿಬಲ್) ಮತ್ತು ಮುಕ್ತವಾದ, ವಿಶ್ವವಿದ್ಯಾಲಯ ಮಟ್ಟದ ಶಿಕ್ಷಣದ ಅನ್ವೇಷಣಾ ಪದ್ಧತಿಯನ್ನು ಅಳವಡಿಸುವುದು ಹಾಗೂ ಜ್ಞಾನದ ಹೊಸ ಕ್ಷೇತ್ರಗಳಲ್ಲಿ ಉತ್ಕೃಷ್ಟತೆಗೆ ಪ್ರೋತ್ಸಾಹಿಸುವುದು, ಶೈಕ್ಷಣಿಕ ಮತ್ತು ಸಮನ್ವಯ ಕಲಿಕೆ, ಇವೆರಡಕ್ಕೂ ಸಮನಾದ ಪ್ರಾಮುಖ್ಯತೆಯನ್ನು ನೀಡುವುದು;

(vii) ವಿಶ್ವವಿದ್ಯಾನಿಲಯ ಅನುದಾನ ಆಯೋಗದ ಮಾನಕಗಳಿನುಸಾರವಾಗಿ ಮಾನವ ಅಭಿವೃದ್ಧಿಯನ್ನು ಅಭಿವೃದ್ಧಿಪಡಿಸುವುದು, ಗುಣಮಟ್ಟದ ಶಿಕ್ಷಣಕ್ಕಾಗಿ ಕೊಡುಗೆಯನ್ನು ನೀಡಲು ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಸಂಪನ್ಮೂಲ ಕೇಂದ್ರಗಳನ್ನು ಅಭಿವೃದ್ಧಿಪಡಿಸುವುದು;

(viii) ವಿಶ್ವವಿದ್ಯಾಲಯದ ಸ್ಥಾಪನೆಯ ಐದು ವರ್ಷಗಳ ತರುವಾಯ ಕರ್ನಾಟಕದಲ್ಲಿ ವಿವಿಧ ಸ್ಥಳಗಳಲ್ಲಿ ಕ್ಯಾಂಪಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳು ಮತ್ತು ಘಟಕ ಕಾಲೇಜುಗಳನ್ನು ಸ್ಥಾಪಿಸುವುದು ಮತ್ತು ತಾಂತ್ರಿಕತೆ, ವೃತ್ತಿಪರತೆ, ಸಾಮಾನ್ಯ ಶಿಕ್ಷಣ ಮತ್ತು ಸಮಾಜ ಮತ್ತು ಮಾನವ

ಅಭಿವೃದ್ಧಿಯಲ್ಲಿ ಶೈಕ್ಷಣಿಕ ಬದಲಾವಣೆಗೆ ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಕೊಡುಗೆ ನೀಡುವುದು ಮತ್ತು ಜ್ಞಾನವನ್ನು ಅಭಿವೃದ್ಧಿಪಡಿಸುವುದು;

(ix) ಮೌಲ್ಯಮಾಪನದ ವಿವಿಧ ಆಧುನಿಕ ವಿಧಾನಗಳ ಮೂಲಕ ಮಾಡಿದ ಮೌಲ್ಯಮಾಪನಕ್ಕೆ ಅನುಸಾರವಾಗಿ ಶಿಕ್ಷಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದುದರ ಆಧಾರದ ಮೇಲೆ ನೀಡಲು ಪದವಿಗಳನ್ನು, ಡಿಪ್ಲೋಮೋಗಳನ್ನು, ಪ್ರಮಾಣಪತ್ರಗಳನ್ನು ಮತ್ತು ಯಶೋಪತ್ರ ಪ್ರದಾನದಂಥ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(x) ಉಪನ್ಯಾಸ ಮಾಲಿಕೆಗಳು, ವಿಚಾರ ಸಂಕಿರಣಗಳು, ಸಮ್ಮೇಳನಗಳು, ಕಾರ್ಯಾಂಗ ಶಿಕ್ಷಣ ಕಾರ್ಯಕ್ರಮಗಳು, ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳು, ಪ್ರಕಟಣೆಗಳು ಮತ್ತು ತರಬೇತಿ ಕಾರ್ಯಕ್ರಮಗಳು ಮತ್ತು ಕಾರ್ಯಸೂಚಿಗಳ ಮೂಲಕ ಜ್ಞಾನ ಪ್ರಸಾರ ಮಾಡುವುದು ಮತ್ತು ಶಿಕ್ಷಣ ಮತ್ತು ತತ್ಸಂಬಂಧಿತ ಅಭಿವೃದ್ಧಿ ಕ್ಷೇತ್ರಗಳ ವಿಷಯಗಳ ಬಗ್ಗೆ ಸಾರ್ವಜನಿಕ ಚರ್ಚೆಯನ್ನು ಏರ್ಪಡಿಸುವುದು;

(xi) ರಾಜ್ಯ ಸರ್ಕಾರದ ಪೂರ್ವ ಅನುಮತಿಯೊಂದಿಗೆ, ಉತ್ತಮ ಗುಣಮಟ್ಟದ ಇತರ ಯಾವುವೇ ವಿಶ್ವವಿದ್ಯಾಲಯಗಳೊಂದಿಗೆ ಸಹಭಾಗಿಗಳಾಗಿ ವಿಶ್ವವಿದ್ಯಾಲಯದ ಬೋಧಕ ವೃಂದ (ಫ್ಯಾಕಲ್ಟಿ) ಮತ್ತು ಸಂಶೋಧಕರ ಅಭಿವೃದ್ಧಿ ಮತ್ತು ತರಬೇತಿಗಾಗಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು;

(xii) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದಕ್ಕಾಗಿ ಮತ್ತು ಉತ್ತೇಜಿಸುವುದಕ್ಕಾಗಿ ಅವಶ್ಯಕವಾದ ಮತ್ತು ಯುಕ್ತವಾದ ಕ್ರಮಗಳನ್ನು ಕೈಗೊಳ್ಳುವುದು;

(xiii) ಭಾರತದಲ್ಲಿ ಶಿಕ್ಷಣ ಮತ್ತು ಇತರ ಅಭಿವೃದ್ಧಿ ವಲಯಗಳನ್ನು ವಿಸ್ತರಿಸುವುದಕ್ಕಾಗಿ ಸರ್ಕಾರವು ಅನುಮೋದಿಸಬಹುದಾದಂತೆ ಯಾವುವೇ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದು.

**8. ವಿಶ್ವವಿದ್ಯಾಲಯದ ಅಧಿಕಾರಗಳು.–** ವಿಶ್ವವಿದ್ಯಾಲಯವು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗೆ ಅನುಸಾರವಾಗಿ ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿರ್ಧರಿಸಬಹುದಾದಂತೆ ವಿಶ್ವವಿದ್ಯಾಲಯದ ಸ್ಥಾಪನೆಯ ದಿನಾಂಕದಿಂದ ಐದು ವರ್ಷಗಳ ತರುವಾಯ ಕ್ಯಾಂಪಸ್ಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಕರ್ನಾಟಕದಲ್ಲಿ ಸ್ಥಾಪಿಸುವುದು ಮತ್ತು ನಿರ್ವಹಿಸುವುದು;

(ii) ವಿಶ್ವವಿದ್ಯಾಲಯದ ಉದ್ದೇಶವನ್ನು ಕಾರ್ಯರೂಪಕ್ಕೆ ತರುವಲ್ಲಿ ಅಗತ್ಯವಾಗಬಹುದಾದ ಅಥವಾ ಕಾರ್ಯಸಾಧ್ಯವಾಗಬಹುದಾದ ಎಲ್ಲಾ ಅಂಥ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು;

(iii) ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಮತ್ತು ಷರತ್ತುಗಳಿಗೊಳಪಟ್ಟು ಪದವಿಗಳು ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರದಾನಮಾಡುವುದು;

(iv) ಪರಿನಿಯಮಗಳನ್ವಯ ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿ ವೇತನಗಳು ಮತ್ತು ಬಹುಮಾನಗಳು, ಅವಾರ್ಡುಗಳು, ಪಾರಿತೋಷಕಗಳು ಇತ್ಯಾದಿಗಳನ್ನು ಸ್ಥಾಪಿಸುವುದು ಮತ್ತು ನೀಡುವುದು;

(v) ಪರಿನಿಯಮಗಳಲ್ಲಿ ಅಥವಾ ಸಂದರ್ಭಾನುಸಾರವಾಗಿ ನಿಯಮಗಳಲ್ಲಿ ನಿಗದಿಪಡಿಸಬಹುದಾದ ಅಂಥ ಶುಲ್ಕಗಳು, ಬಿಲ್ಲುಗಳು, ಖರೀದಿ ಪಟ್ಟಿಗಳನ್ನು ಕೇಳಿಪಡೆದುಕೊಳ್ಳುವುದು ಮತ್ತು ಸ್ವೀಕರಿಸುವುದು ಹಾಗೂ ಚಾರ್ಜುಗಳನ್ನು ವಸೂಲು ಮಾಡುವುದು;

(vi) ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಪಠ್ಯೇತರ ಚಟುವಟಿಕೆಗಳಿಗೆ ಅವಕಾಶಗಳನ್ನು ಕಲ್ಪಿಸುವುದು;

(vii) ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಕ್ಯಾಂಪಸುಗಳ, ಪ್ರಾದೇಶಿಕ ಕೇಂದ್ರಗಳ, ಅಧ್ಯಯನ ಕೇಂದ್ರಗಳ ಫ್ಯಾಕಲ್ಟಿ, ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವುದು;

(viii) ವಿಶ್ವವಿದ್ಯಾಲಯದ ಅಥವಾ ಒಂದು ಘಟಕ ಕಾಲೇಜಿನ ಅಥವಾ ಕ್ಯಾಂಪಸ್ಸಿನ, ಪ್ರಾದೇಶಿಕ ಕೇಂದ್ರದ ಮತ್ತು ಅಧ್ಯಯನ ಕೇಂದ್ರದ ಉದ್ದೇಶಕ್ಕಾಗಿ. ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ

ನಿಷೇಧಿಸದಿರುವ, ಯಾವುದೇ ರೀತಿಯ ಸ್ವಯಂ ದೇಣಿಗೆಗಳು ಮತ್ತು ಕೊಡುಗೆಗಳನ್ನು ಸ್ವೀಕರಿಸುವುದು ಮತ್ತು ನ್ಯಾಸ ಮತ್ತು ದತ್ತಿ ಸ್ವತ್ತುಗಳೂ ಸೇರಿದಂತೆ, ಯಾವುದೇ ಚರ ಅಥವಾ ಸ್ಥಿರ ಸ್ವತ್ತನ್ನು ಆರ್ಜಿಸುವುದು. ಹೊಂದಿರುವುದು. ನಿರ್ವಹಿಸುವುದು. ನಡೆಸುವುದು ಮತ್ತು ಹಸ್ತಾಂತರ ಮಾಡುವುದು:

(ix) ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸಿಕೊಂಡು ಬರುವುದು ಹಾಗೂ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ ವಿದ್ಯಾರ್ಥಿಗಳಿಗೆ ವಸತಿ ಸ್ಥಳಗಳಾಗಿ ಮಾನ್ಯತೆ ನೀಡುವುದು;

(x) ವಸತಿಯ ಮೇಲ್ವಿಚಾರಣೆ ಮಾಡುವುದು ಮತ್ತು ನಿಯಂತ್ರಣ ಮಾಡುವುದು ಹಾಗೂ ವಿದ್ಯಾರ್ಥಿಗಳು ಮತ್ತು ಎಲ್ಲಾ ಪ್ರವರ್ಗಗಳ ಸಿಬ್ಬಂದಿಗಳಲ್ಲಿ ಶಿಸ್ತು ನಿಯಂತ್ರಣ ಮಾಡುವುದು ಮತ್ತು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ನಡತೆ ಸಂಹಿತೆಯನ್ನು ರೂಪಿಸುವುದೂ ಒಳಗೊಂಡಂತೆ, ಅಂಥ ಸಿಬ್ಬಂದಿಗಳ ಸೇವಾಷರತ್ತುಗಳನ್ನು ನಿರೂಪಿಸುವುದು;

(xi) ಶೈಕ್ಷಣಿಕ, ಆಡಳಿತಾತ್ಮಕ ಮತ್ತು ಬೆಂಬಲ ಸಿಬ್ಬಂದಿಯ ಹುದ್ದೆಗಳನ್ನು ಮತ್ತು ಇತರ ಅವಶ್ಯ ಹುದ್ದೆಗಳನ್ನು ಸೃಜಿಸುವುದು;

(xii) ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ಉದ್ದೇಶಗಳಿಗಾಗಿ ಇತರ ವಿಶ್ವವಿದ್ಯಾಲಯಗಳೊಡನೆ ಸಹಕರಿಸುವುದು ಮತ್ತು ಸಹಯೋಗ ಹೊಂದುವುದು;

(xiv) ಶಿಕ್ಷಕರಿಗೆ, ಪಾಠಗಳನ್ನು ರಚಿಸುವವರಿಗೆ, ಮೌಲ್ಯಮಾಪಕರಿಗೆ ಮತ್ತಿತರ ಶೈಕ್ಷಣಿಕ ಸಿಬ್ಬಂದಿಗೆ ಪುನರ್ಮನನ ವ್ಯಾಸಂಗಕ್ರಮಗಳು, ಅಭಿಮುಖ ವ್ಯಾಸಂಗ ಕ್ರಮಗಳು, ಕಾರ್ಯಾಗಾರಗಳು, ವಿಚಾರಗೋಷ್ಠಿಗಳು ಮತ್ತಿತರ ಕಾರ್ಯಕ್ರಮಗಳನ್ನು ಏರ್ಪಡಿಸುವುದು ಮತ್ತು ನಡೆಸುವುದು;

(xiv) ಶೈಕ್ಷಣಿಕ ಪರಿಷತ್ತಿನ ಅನುಮೋದನೆಯೊಂದಿಗೆ ವಿಶ್ವವಿದ್ಯಾಲಯಕ್ಕೆ ಅಥವಾ ಘಟಕ ಕಾಲೇಜಿಗೆ, ಪ್ರಾದೇಶಿಕ ಕೇಂದ್ರಗಳಿಗೆ, ಅಧ್ಯಯನ ಕೇಂದ್ರಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮತ್ತು ಈ ಅಧಿನಿಯಮದಲ್ಲಿ ಕಲ್ಪಿಸಿದ ವ್ಯಾಪ್ತಿಗಿಂತ ಕಡಿಮೆಯಿಲ್ಲದಂತೆ ಕರ್ನಾಟಕದ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮಾನಕ ಗುಣಮಟ್ಟಗಳನ್ನು ನಿರ್ಧರಿಸುವುದು;

(xv) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಕಾರ್ಯರೂಪಕ್ಕೆ ತರಲು ಅವಶ್ಯವಾಗಬಹುದಾದಂಥ ಇತರ ಎಲ್ಲಾ ಕ್ರಮಗಳನ್ನು ಅಥವಾ ಕಾರ್ಯಗಳನ್ನು, ಅವು ಮೇಲೆ ಹೇಳಿದ ಅಧಿಕಾರಗಳಿಗೆ ಪ್ರಾಸಂಗಿಕವಾಗಿರಲಿ ಅಥವಾ ಇಲ್ಲದಿರಲಿ, ಕೈಗೊಳ್ಳುವುದು;

(xvi) ಪರೀಕ್ಷೆಗಳ ಆಧಾರದ ಮೇಲೆ ಅಥವಾ ಸರ್ಕಾರದಿಂದ ಅನುಮೋದಿತವಾದ ಇತರ ಯಾವುದೇ ಮೌಲ್ಯಮಾಪನ ವಿಧಾನದ ಆಧಾರದ ಮೇಲೆ ನೀಡಲು ಪದವಿಗಳು, ಡಿಪ್ಲೋಮಾಗಳು, ಪ್ರಮಾಣಪತ್ರಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಸ್ಥಾಪಿಸುವುದು;

(xvii) ಫಿಲಂಗಳು, ಕ್ಯಾಸೆಟ್‌ಗಳು, ಧ್ವನಿಸುರುಳಿಗಳು, ದೃಶ್ಯಸುರುಳಿಗಳು, ಸಿ.ಡಿ., ವಿ.ಸಿ.ಡಿ. ಮತ್ತು ಇತರ ತಂತ್ರಾಂಶಗಳೂ ಹಾಗೂ ಇತರ ಸಂಬಂಧಿತ ವಿದ್ಯುನ್ಮಾನ ಮತ್ತು ಮುದ್ರಣ ಮಾಧ್ಯಮ ಸೇರಿದಂತೆ ಬೋಧಕ ಸಾಮಗ್ರಿಗಳನ್ನು ತಯಾರಿಸುವುದಕ್ಕಾಗಿ ಅವಕಾಶ ಕಲ್ಪಿಸುವುದು;

(xviii) ಪ್ರಬಂಧಕ ಮಂಡಳಿಯ ಅನುಮೋದನೆಯೊಡನೆ ವಿಶ್ವವಿದ್ಯಾಲಯದ ಉದ್ದೇಶಗಳಿಗಾಗಿ ವಿಶ್ವವಿದ್ಯಾಲಯದ ಸ್ವತ್ತುಗಳನ್ನು ಭದ್ರತೆಯಾಗಿ ನೀಡಿ ಅಥವಾ ನೀಡದೆ ಹಣವನ್ನು ಪಡೆಯುವುದು, ಸಂಗ್ರಹಿಸುವುದು. ಚಂದಾದಾರರಾಗುವುದು ಮತ್ತು ಸಾಲ ಪಡೆಯುವುದು;

(xix) ಕಾರ್ಯಕಾರಿ ಪರಿಷತ್ತು ಪೂರ್ವಾನುಮೋದನೆಯೊಂದಿಗೆ ಸ್ವತ್ತುಗಳನ್ನು ಆರ್ಜಿಸುವುದು;

(xx) ವಿಶ್ವವಿದ್ಯಾಲಯದ ಮೇಲಿನ ಉದ್ದೇಶಗಳಿಗೆ ಸಂಬಂಧಿಸಿದ ಅಥವಾ ಪ್ರಾಸಂಗಿಕವಾದ ಯಾವುದೇ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು.

**9. ವಿಶ್ವವಿದ್ಯಾಲಯವು ಎಲ್ಲಾ ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲರಿಗೂ ಮುಕ್ತವಾಗಿರತಕ್ಕದ್ದು.**- ವಿಶ್ವವಿದ್ಯಾಲಯದ ಪ್ರವೇಶಗಳು ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲಾ

ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು. ಎಲ್ಲಾ ಪ್ರವೇಶಗಳನ್ನು ಅರ್ಹತಾ ಪರೀಕ್ಷೆಗಳಲ್ಲಿನ ಅರ್ಹತೆಯ ಆಧಾರದ ಮೇಲೆ ಮಾಡತಕ್ಕದ್ದು:

ಪರಂತು, ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳ ಪ್ರವೇಶದಲ್ಲಿ ಶೇಕಡಾ ನಲವತ್ತರಷ್ಟನ್ನು ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ಮೀಸಲಿಡತಕ್ಕದ್ದು ಮತ್ತು ಪ್ರವೇಶಗಳನ್ನು ರಾಜ್ಯ ಸರ್ಕಾರವು ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡತಕ್ಕದ್ದು ಮತ್ತು ಸೀಟುಗಳನ್ನು ಅರ್ಹತ ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ರೂಪಿಸುವ ಮೀಸಲಾತಿ ನೀತಿಗೆ ಅನುಸಾರವಾಗಿ ಹಂಚಿಕೆ ಮಾಡತಕ್ಕದ್ದು:

ಮತ್ತು ಪರಂತು, ಯಾವುದೇ ಕೋರ್ಸಿನಲ್ಲಿ ಹತ್ತಕ್ಕಿಂತ ಕಡಿಮೆ ಸೀಟುಗಳು ಇರುವಲ್ಲಿ, ಸ್ನಾತಕೋತ್ತರ ಇಂಥ ಕೋರ್ಸುಗಳನ್ನು ಒಟ್ಟಿಗೆ ಒಂದುಗೂಡಿಸುವ ಮೂಲಕ ಮೀಸಲಿಡತಕ್ಕದ್ದು ಮತ್ತು ಯಾವುದೇ ಕೋರ್ಸಿನಲ್ಲಿ ಮೂರು ಸೀಟುಗಳಿಗಿಂತ ಕಡಿಮೆ ಇರುವಲ್ಲಿ, ಅವುಗಳನ್ನು ಸರದಿ ಸುತ್ತಿನಲ್ಲಿ ಮೀಸಲಿಡತಕ್ಕದ್ದು.

ಅಲ್ಲದೇ ಪರಂತು, ವಿಶ್ವವಿದ್ಯಾಲಯಕ್ಕೆ ಅಲ್ಪಸಂಖ್ಯಾತ ಸಂಸ್ಥೆ ಎಂದು ಮಾನ್ಯತೆ ನೀಡಲಾಗಿದ್ದಲ್ಲಿ, ಅಲ್ಪಸಂಖ್ಯಾತ ಸಂಸ್ಥೆಗೆ ಅನ್ವಯವಾಗುವ ಕಾನೂನಿನ ಅನುಸಾರವಾಗಿ ಪ್ರವೇಶವನ್ನು ನೀಡತಕ್ಕದ್ದು.

**10. ರಾಷ್ಟ್ರೀಯ ಅಧಿಮಾನ್ಯತೆ.–** ವಿಶ್ವವಿದ್ಯಾಲಯವು ಪ್ರಾರಂಭವಾದ ತರುವಾಯ ಆದಷ್ಟು ಬೇಗನೆ ಸಂಬಂಧಪಟ್ಟ ಶಾಸನಾತ್ಮಕ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳಿಂದ ಅಧಿಮಾನ್ಯತೆಯನ್ನು ಕೋರತಕ್ಕದ್ದು ಮತ್ತು ಖಾಸಗಿ ವಿಶ್ವವಿದ್ಯಾಲಯಗಳು ನಡೆಸುವ ಎಲ್ಲಾ ವ್ಯಾಸಂಗ ಕ್ರಮಗಳು ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ವಿನಿಯಮಗಳಿಗೆ ಅನುಸಾರವಾಗಿ ಇರತಕ್ಕದ್ದು.

**11. ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು.–** ಪ್ರಾಯೋಜಕ ಸಂಸ್ಥೆಯು ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದಂತೆ ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಇವುಗಳಲ್ಲಿ ಪ್ರತಿಯೊಂದನ್ನು ಪ್ರಾಯೋಜಕ ಸಂಸ್ಥೆಯು ತನ್ನ ವಿವೇಚನಾನುಸಾರ ಚಲಾಯಿಸಬಹುದು, ಎಂದರೆ:-

(i) ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಪುನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(ii) ವಿಶ್ವವಿದ್ಯಾಲಯದ ಪ್ರಥಮ ಪ್ರಬಂಧಕ ಮಂಡಳಿಯನ್ನು ರಚಿಸುವುದು;

(iii) ಪ್ರಬಂಧಕ ಮಂಡಳಿಯ ಅಧ್ಯಕ್ಷರನ್ನು ನಾಮನಿರ್ದೇಶಿಸುವುದು;

(iv) ಪ್ರಬಂಧಕ ಮಂಡಳಿಯ ಸದಸ್ಯರಾಗಿ ಮೂರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(v) ಕಾರ್ಯಕಾರಿ ಪರಿಷತ್ತಿನ ಸದಸ್ಯರಾಗಿ ಇಬ್ಬರು ವ್ಯಕ್ತಿಗಳನ್ನು ನಾಮ ನಿರ್ದೇಶಿಸುವುದು;

(vi) ವಿಶ್ವವಿದ್ಯಾಲಯದ ದತ್ತಿ ನಿಧಿಗೆ ದೇಣಿಗೆ ನೀಡಲು ನಿಧಿ ಮೂಲಗಳನ್ನು ನಿರ್ಧರಿಸುವುದು;

(vii) ವಿಶ್ವವಿದ್ಯಾಲಯದ ಹಣದ ವಿನಿಯೋಗ ಮತ್ತು ವೆಚ್ಚ ಮಾಡುವುದನ್ನು ನಿರ್ಧರಿಸುವುದು;

(viii) ಈ ಅಧಿನಿಯಮದಲ್ಲಿ ಉಪಬಂಧಿಸಿರುವ ವಿಧಾನದಲ್ಲಿ ಪ್ರಬಂಧಕ ಮಂಡಳಿಯ ಸಭೆಯಲ್ಲಿಯ ವಿವಾದಗಳನ್ನು ಬಗೆಹರಿಸುವುದು;

## ಅಧ್ಯಾಯ – III

## ವಿಶ್ವವಿದ್ಯಾಲಯದ ಅಧಿಕಾರಿಗಳು

**12. ವಿಶ್ವವಿದ್ಯಾಲಯದ ಅಧಿಕಾರಿಗಳು.–** ಈ ಮುಂದಿನವರು ವಿಶ್ವವಿದ್ಯಾಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:-

(i) ಸಂದರ್ಶಕರು;

(ii) ಸಹ-ಸಂದರ್ಶಕರು;

(iii) ಕುಲಾಧಿಪತಿಗಳು;

(iv) ಸಹ-ಕುಲಾಧಿಪತಿಗಳು;

(v) ಕುಲಪತಿಗಳು;

(vi) ಸಹಕುಲಪತಿಗಳು;

(vii) ವ್ಯಾಸಂಗ ವಿಭಾಗದ ಡೀನ್‌ಗಳು;

(viii) ಕುಲಸಚಿವರು;

(ix) ಹಣಕಾಸು ಅಧಿಕಾರಿ; ಮತ್ತು

(x) ಪರಿನಿಯಮಗಳ ಮೂಲಕ ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಘೋಷಿಸಬಹುದಾದಂಥ ಇತರ ಅಧಿಕಾರಿಗಳು.

**13. ಸಂದರ್ಶಕರು.–** (1) ಕರ್ನಾಟಕದ ಘನತೆವೆತ್ತ ರಾಜ್ಯಪಾಲರು ವಿಶ್ವವಿದ್ಯಾಲಯದ ಸಂದರ್ಶಕರಾಗಿರತಕ್ಕದ್ದು ಮತ್ತು ಸಂದರ್ಶಕರು ವಿಶ್ವವಿದ್ಯಾಲಯದ ಕಾರ್ಯನಿರ್ವಹಣೆಯ ಸುಧಾರಣೆಗಾಗಿ ಸಲಹೆಗಳನ್ನು ನೀಡಬಹುದು.

(2) ಸಂದರ್ಶಕರು, ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಸಂದರ್ಶಕರು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ವ್ಯವಹಾರಗಳಿಗೆ ಸಂಬಂಧಿಸಿದಂತೆ, ಯಾವುದೇ ಪತ್ರ ಅಥವಾ ಮಾಹಿತಿಯನ್ನು ತರಿಸಿಕೊಳ್ಳುವುದು.

(ii) ಸಂದರ್ಶಕರು, ಅವರು ಸ್ವೀಕರಿಸಿದ ಮಾಹಿತಿಯ ಆಧಾರದ ಮೇಲೆ ವಿಶ್ವವಿದ್ಯಾಲಯಗಳ ಯಾವುದೇ ಪ್ರಾಧಿಕಾರವು ಮಾಡಿದ ಯಾವುದೇ ಆದೇಶ, ನಡೆಸಿದ ವ್ಯವಹರಣೆಗಳು ಅಥವಾ ಕೈಗೊಂಡ ತೀರ್ಮಾನಗಳು, ಈ ಅಧಿನಿಯಮ, ವಿನಿಯಮಗಳು ಅಥವಾ ನಿಯಮಗಳಿಗೆ ಪೂರಕವಾಗಿಲ್ಲವೆಂದು ಮನಗಂಡರೆ ಅವರು ವಿಶ್ವವಿದ್ಯಾಲಯದ ಹಿತಾಸಕ್ತಿಯಿಂದ ತಾವು ಸೂಕ್ತವೆಂದು ಭಾವಿಸಬಹುದಾದಂಥ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಹಾಗೆ ಹೊರಡಿಸಿದ ನಿರ್ದೇಶನಗಳನ್ನು ಸಂಬಂಧಪಟ್ಟವರೆಲ್ಲರೂ ಪಾಲಿಸತಕ್ಕದ್ದು.

**14. ಸಹ-ಸಂದರ್ಶಕರು.–** (1) ಕರ್ನಾಟಕ ಸರ್ಕಾರದ ಮಾನ್ಯ ಉನ್ನತ ಶಿಕ್ಷಣ ಸಚಿವರು ವಿಶ್ವವಿದ್ಯಾಲಯದ ಸಹ-ಸಂದರ್ಶಕರಾಗಿರತಕ್ಕದ್ದು.

(2) ಸಂದರ್ಶಕರ ಅನುಪಸ್ಥಿತಿಯಲ್ಲಿ ಸಹ-ಸಂದರ್ಶಕರು ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**15. ಕುಲಾಧಿಪತಿಗಳು.–** (1) ಕುಲಾಧಿಪತಿಯವರನ್ನು ಪ್ರಾಯೋಜಕ ಸಂಸ್ಥೆಯು ನೇಮಿಸತಕ್ಕದ್ದು.

(2) ಪ್ರಾಯೋಜಕ ಸಂಸ್ಥೆಯ ಪ್ರಸ್ತುತ ಅಧ್ಯಕ್ಷರು ಮೊದಲನೇ ಕುಲಾಧಿಪತಿಗಳಾಗಿರತಕ್ಕದ್ದು. ಅವರು ತಮ್ಮ ಜೀವನಪರ್ಯಂತ ಅಥವಾ ಅವರು ತಮ್ಮ ಪದವನ್ನು ಬಿಟ್ಟುಕೊಡುವವರೆಗೆ ಕುಲಾಧಿಪತಿಗಳಾಗಿ ಪದಧಾರಣ ಮಾಡಿರತಕ್ಕದ್ದು.

(3) ತದನಂತರದ ಕುಲಾಧಿಪತಿಗಳು, ಅಂಥ ನೇಮಕಾತಿಯನ್ನು ಪರಿಗಣಿಸುವ ಸಂದರ್ಭದಲ್ಲಿ ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ, ಪ್ರಾಯೋಜಕ ಸಂಸ್ಥೆಯ ನ್ಯಾಸಧಾರಿಯಾಗಿರತಕ್ಕದ್ದು ಅಥವಾ ಶಿಕ್ಷಣ, ವಿಜ್ಞಾನ, ಸಂಸ್ಕೃತಿ ಅಥವಾ ಸಾರ್ವಜನಿಕ ಜೀವನ ಕ್ಷೇತ್ರಗಳಲ್ಲಿ ರಾಷ್ಟ್ರೀಯ ಮಟ್ಟದ ಛಾಪನ್ನು ಪಡೆದಿರುವ ಅಂಥ ಇತರ ವ್ಯಕ್ತಿಯಾಗಿರತಕ್ಕದ್ದು.

(4) ಹಾಗೆ ನೇಮಕಗೊಂಡ ತದನಂತರದ ಕುಲಾಧಿಪತಿಗಳು ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ಪದಧಾರಣ ಮಾಡತಕ್ಕದ್ದು.

(5) ಕುಲಾಧಿಪತಿಗಳು ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳ ಅಡಿಯಲ್ಲಿ ಅವರಿಗೆ ಪ್ರದಾನ ಮಾಡಬಹುದಾದಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು, ಅವುಗಳಲ್ಲಿ ಈ ಮುಂದಿನ ಅಧಿಕಾರಗಳು ಒಳಗೊಂಡಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುವುದು;

(ii) ಸಂದರ್ಶಕರ ಮತ್ತು ಸಹ-ಸಂದರ್ಶಕರಿಬ್ಬರ ಗೈರುಹಾಜರಿಯಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಘಟಿಕೋತ್ಸವಗಳಲ್ಲಿ ಅಧ್ಯಕ್ಷತೆಯನ್ನು ವಹಿಸುವುದು;

(iii) ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವುದು;

(iv) ಈ ಅಧಿನಿಯಮ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಅನುಸಾರವಾಗಿ ಸಹ-ಕುಲಾಧಿಪತಿಗಳು, ಕುಲಪತಿಗಳನ್ನು ನೇಮಿಸುವುದು ಅಥವಾ ಪುನರ್ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(v) ಈ ಅಧಿನಿಯಮದ 16ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ನಾಮನಿರ್ದೇಶಕ ಸಮಿತಿಯ ಸದಸ್ಯರಾಗಿ ಒಬ್ಬ ವ್ಯಕ್ತಿಯನ್ನು ನಾಮನಿರ್ದೇಶನ ಮಾಡುವುದು;

(vi) ಸಹಕುಲಪತಿಗಳು, ಡೀನ್, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿಗಳ ನೇಮಕಾತಿಯನ್ನು ಪೂರ್ವಾನುಮೋದಿಸುವುದು;

(vii) ಪ್ರಬಂಧಕ ಮಂಡಳಿಯ ಸದಸ್ಯರನ್ನಾಗಿ ಇಬ್ಬರು ಶಿಕ್ಷಣ ತಜ್ಞರನ್ನು ನಾಮನಿರ್ದೇಶಿಸುವುದು;

(viii) ಮೊದಲ ಸಹಕುಲಪತಿಗಳನ್ನು ನೇಮಿಸುವುದು;

(ix) ಮೊದಲ ವ್ಯವಸ್ಥಾಪನಾ ಮಂಡಳಿ, ಹಣಕಾಸು ಸಮಿತಿ, ಸಂಶೋಧನಾ ಪರಿಷತ್ತು ಹಾಗೂ ಶೈಕ್ಷಣಿಕ ಪರಿಷತ್ತುಗಳನ್ನು ರಚಿಸುವುದು;

(x) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ ಕಾರ್ಯಸೂಚಿ ವಿಷಯಗಳನ್ನು ಪೂರ್ವಾನುಮೋದಿಸುವುದು;

(xi) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ (ಪ್ರಬಂಧಕ ಮಂಡಳಿಯ ಸಭೆಯಲ್ಲಿ ಉಂಟಾದ ವಿವಾದಗಳನ್ನು ಹೊರತುಪಡಿಸಿ) ವಿವಾದಗಳನ್ನು ಪರಿಹರಿಸುವುದು.

(6) ಪದಾಧಿಕಾರಿ ಅಥವಾ ಸಂಸ್ಥೆ ಮತ್ತು ವಿಶ್ವವಿದ್ಯಾಲಯದ ಯಾವುದೇ ಇತರ ಪದಾಧಿಕಾರಿ ಅಥವಾ ಸಂಸ್ಥೆಯ ನಡುವೆ ವಿವಾದಗಳು ಉಂಟಾದಲ್ಲಿ, ಆ ವಿವಾದವನ್ನು ಕುಲಾಧಿಪತಿಯವರ ಪರ್ಯಾಲೋಚನೆಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿವಾದದ ಸಂದರ್ಭದಲ್ಲಿ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**16. ಸಹ-ಕುಲಾಧಿಪತಿಗಳು.-** (1) ಪರಿನಿಯಮಗಳಲ್ಲಿ ಹೇಳಬಹುದಾದ ಅಂಥ ಇತರ ನಿಬಂಧನೆಗಳು ಮತ್ತು ಷರತ್ತುಗಳಿಗೆ ಒಳಪಟ್ಟು ಕುಲಾಧಿಪತಿಗಳು ನಿಯಮಿಸಿದ ಅವಧಿಗಾಗಿ, ಕುಲಾಧಿಪತಿಗಳು, ಸಹ-ಕುಲಾಧಿಪತಿಗಳನ್ನು ನೇಮಕ ಮಾಡತಕ್ಕದ್ದು.

(2) ಸಹ-ಕುಲಾಧಿಪತಿಯು, ಕುಲಾಧಿಪತಿಯ ಗೈರುಹಾಜರಿಯಲ್ಲಿ ಆತನ ಎಲ್ಲಾ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಕುಲಾಧಿಪತಿಯ ಲಿಖಿತ ಅನುಮೋದನೆಯೊಂದಿಗೆ ಆತನಿಗೆ ಯಾವುದೇ ಇತರ ಕರ್ತವ್ಯಗಳನ್ನು ವಹಿಸತಕ್ಕದ್ದು.

(3) ಸಹ-ಕುಲಾಧಿಪತಿಯು, ಕುಲಾಧಿಪತಿಯ ಗೈರು ಹಾಜರಿಯಲ್ಲಿ ಎಲ್ಲಾ ಸಮಿತಿಗಳು, ಸಭೆಗಳು ಮತ್ತು ಘಟಿಕೋತ್ಸವದ ಅಧ್ಯಕ್ಷತೆ ವಹಿಸತಕ್ಕದ್ದು.

(4) ಕುಲಾಧಿಪತಿಯು, ತಾನು ಸೂಕ್ತವೆಂದು ಭಾವಿಸುವ ಯಾವುದೇ ಸಮಯದಲ್ಲಿ ಸಹ-ಕುಲಾಧಿಪತಿಯ ಸೇವೆಗಳನ್ನು ಮುಕ್ತಾಯಗೊಳಿಸಬಹುದು.

**17. ಕುಲಪತಿಗಳು.-** (1) (2)ನೇ ಉಪಪ್ರಕರಣದ ಉಪಬಂಧಗಳಿಗೆ ಅನುಸಾರವಾಗಿ ನಾಮನಿರ್ದೇಶಕ ಸಮಿತಿಯು ಶಿಫಾರಸ್ಸು ಮಾಡಿದ ಮೂರು ವ್ಯಕ್ತಿಗಳ ಪೈಕಿಯಿಂದ ಒಬ್ಬರನ್ನು ಮೂರು ವರ್ಷಗಳ ಅವಧಿಗಾಗಿ ಕುಲಪತಿಗಳನ್ನಾಗಿ, ಪರಿನಿಯಮಗಳಲ್ಲಿ ನಿಯಮಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರು ನೇಮಿಸತಕ್ಕದ್ದು. ಮೂರು ವರ್ಷಗಳ ಅವಧಿಯು ಮುಗಿದ ತರುವಾಯ, ಇದನ್ನು ಮೂರು ವರ್ಷಗಳ ಮತ್ತೊಂದು ಅವಧಿಗೆ ನವೀಕರಿಸಬಹುದು:

ಪರಂತು, ಕುಲಪತಿಯವರು, ತಮ್ಮ ಅವಧಿ ಮುಗಿದ ನಂತರವೂ ಹೊಸ ಕುಲಪತಿಯವರು ಸೇರಿಕೊಳ್ಳುವವರೆಗೆ ಪದದಲ್ಲಿ ಮುಂದುವರೆಯತಕ್ಕದ್ದು. ಆದಾಗ್ಯೂ ಈ ಅವಧಿಯು ಯಾವುದೇ ಸಂದರ್ಭದಲ್ಲಿ ಒಂದು ವರ್ಷವನ್ನು ಮೀರತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಹೇಳಿರುವ ನಾಮನಿರ್ದೇಶಕ ಸಮಿತಿಯಲ್ಲಿ ಈ ಮುಂದಿನ ವ್ಯಕ್ತಿಗಳು ಇರತಕ್ಕದ್ದು, ಎಂದರೆ-

(i) ಕುಲಾಧಿಪತಿಯವರು ನಾಮನಿರ್ದೇಶಿಸಿದ ಒಬ್ಬ ವ್ಯಕ್ತಿ;

(ii) ಪ್ರಬಂಧಕ ಮಂಡಳಿಯ ಇಬ್ಬರು ನಾಮ ನಿರ್ದೇಶಿತರು, ಇವರಲ್ಲಿ ಒಬ್ಬರನ್ನು ಪ್ರಬಂಧಕ ಮಂಡಳಿಯ ಸಮಿತಿಯ ಸಂಚಾಲಕರೆಂದು ನಾಮನಿರ್ದೇಶಿಸತಕ್ಕದ್ದು.

(3) ನಾಮನಿರ್ದೇಶನ ಸಮಿತಿಯು, ಅರ್ಹತೆಯ ಆಧಾರದ ಮೇಲೆ ಕುಲಪತಿಯ ಹುದ್ದೆಗೆ ಸೂಕ್ತವಾದ ಮೂರು ವ್ಯಕ್ತಿಗಳ ಹೆಸರನ್ನು ಶಿಫಾರಸ್ಸು ಮಾಡತಕ್ಕದ್ದು ಮತ್ತು ಅದನ್ನು ಪ್ರತಿಯೊಬ್ಬ ವ್ಯಕ್ತಿಯ ವಿದ್ಯಾರ್ಹತೆ ಮತ್ತಿತರ ವಿಶಿಷ್ಟ ಪ್ರಶಸ್ತಿಗಳನ್ನು ತಿಳಿಸುವ ಒಂದು ಸಂಕ್ಷಿಪ್ತ ವರದಿಯೊಂದಿಗೆ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು.

(4) ಕುಲಪತಿಯವರು ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಾಹಕ ಮತ್ತು ಶೈಕ್ಷಣಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣವನ್ನು ಚಲಾಯಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯದ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೊಳಿಸತಕ್ಕದ್ದು:

ಪರಂತು, ಶಿಕ್ಷಕರ ನೇಮಕಾತಿಯನ್ನು ಹೊರತುಪಡಿಸಿ ಕೂಡಲೇ ಕ್ರಮವನ್ನು ಕೈಗೊಳ್ಳಬೇಕಾದ ತುರ್ತು ಸ್ವರೂಪದ ಯಾವುದೇ ಇತರ ವಿಷಯಗಳಲ್ಲಿ ಮತ್ತು ಅದನ್ನು ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ವಿಶ್ವವಿದ್ಯಾಲಯವು ಇದಕ್ಕಾಗಿ ಅಧಿಕೃತಗೊಳಿಸಿದ್ದ ಯಾವೊಬ್ಬ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ಇತರ ಸಂಸ್ಥೆಯು ಕೂಡಲೇ ಕ್ರಮಕೈಗೊಳ್ಳುವುದು ಸಾಧ್ಯವಿರದಿರುವಾಗ ಕುಲಪತಿಯವರು ತಾನು ಸೂಕ್ತವೆಂದು ಭಾವಿಸಬಹುದಾದಂತಹ ಕ್ರಮವನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆದು ಕೈಗೊಳ್ಳತಕ್ಕದ್ದು.

(5) ಕುಲಪತಿಯವರು ಪರಿನಿಯಮಗಳು ಅಥವಾ ನಿಯಮಗಳಲ್ಲಿ ಹೇಳಲಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು:

ಪರಂತು, ಕುಲಪತಿಗಳ ಅಭಿಪ್ರಾಯದಲ್ಲಿ, ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಯಾವುದೇ ನಿರ್ಣಯವು, ಈ ಅಧಿನಿಯಮ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳು, ವಿನಿಯಮಗಳು ಅಥವಾ ನಿಯಮಗಳ ಮೂಲಕ ಪ್ರದತ್ತವಾದ ಅಧಿಕಾರದ ಹೊರಗಿದ್ದರೆ ಅಥವಾ ವಿಶ್ವವಿದ್ಯಾಲಯದ ಹಿತಾಸಕ್ತಿಗೆ ಪ್ರತಿಕೂಲವಾಗಬಹುದಾಗಿದ್ದರೆ, ಅದರ ನಿರ್ಣಯದ ದಿನಾಂಕದಿಂದ ಹದಿನೈದು ದಿನಗಳ ಒಳಗೆ ತನ್ನ ನಿರ್ಣಯವನ್ನು ಪರಿಷ್ಕರಿಸಲು ಸಂಬಂಧಪಟ್ಟ ಪ್ರಾಧಿಕಾರವನ್ನು ಆತನು ಕೋರತಕ್ಕದ್ದು ಮತ್ತು ಪ್ರಾಧಿಕಾರವು ಅಂಥ ನಿರ್ಣಯವನ್ನು ಸಂಪೂರ್ಣವಾಗಿ ಅಥವಾ ಭಾಗಶಃವಾಗಿ ಪರಿಷ್ಕರಿಸಲು ನಿರಾಕರಿಸಿದ ಸಂದರ್ಭದಲ್ಲಿ ಅಥವಾ ಹದಿನೈದು ದಿನಗಳೊಳಗೆ ಯಾವುದೇ ನಿರ್ಣಯವನ್ನು ತೆಗೆದುಕೊಳ್ಳಲು ವಿಫಲವಾದಲ್ಲಿ, ನಂತರ ಅಂಥ ವಿಷಯವನ್ನು ಕುಲಾಧಿಪತಿಗಳಿಗೆ ಕಳುಹಿಸತಕ್ಕದ್ದು ಮತ್ತು ಈ ಬಗ್ಗೆ ಇವರ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

(6) ಕುಲಪತಿಯವರ ಸೇವೆಗಳನ್ನು, ಪ್ರಬಂಧಕ ಮಂಡಳಿಯ ಅನುಮೋದನೆಯೊಂದಿಗೆ ಮತ್ತು ಸಹಜ ನ್ಯಾಯದ ತತ್ವಗಳನ್ನು ಅನುಸರಿಸಿದ ನಂತರ ಹಾಗೂ ಶಿಸ್ತಿನ ಆಧಾರದ ಮೇಲೆ ಅಂತ್ಯಗೊಳಿಸುವ ಸಂದರ್ಭವೂ ಸೇರಿದಂತೆ, ಪ್ರಕರಣದ ಬಗ್ಗೆ ಕುಲಪತಿಯು ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡಿದ ತರುವಾಯ, ಕುಲಾಧಿಪತಿಯವರು ಅಂತ್ಯಗೊಳಿಸಬಹುದು.

(7) ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಸಂದರ್ಶಕರು, ಸಹ-ಸಂದರ್ಶಕರು, ಕುಲಾಧಿಪತಿಯವರು ಮತ್ತು ಸಹ-ಕುಲಾಧಿಪತಿಯವರು ಇವರುಗಳ ಗೈರು ಹಾಜರಿಯ ಸಂದರ್ಭದಲ್ಲಿ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**18. ಸಹಕುಲಪತಿಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಮೂರು ಜನರನ್ನು ಮೀರದಂತೆ ಸಹಕುಲಪತಿಗಳನ್ನು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**19. ವ್ಯಾಸಂಗ ವಿಭಾಗಗಳ ಡೀನ್‌ಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಪರಿನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವ್ಯಾಸಂಗ ವಿಭಾಗಗಳ ಡೀನ್‌ಗಳನ್ನು ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**20. ಕುಲಸಚಿವರು.–** (1) ಕುಲಾಧಿಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಸಚಿವರನ್ನು ನೇಮಕ ಮಾಡತಕ್ಕದ್ದು.

(2) ಪರಿನಿಯಮಗಳಲ್ಲಿ ಪರಿಭಾಷಿಸಿರುವಂಥ ಎಲ್ಲಾ ಕರಾರುಗಳನ್ನು ವಿಶ್ವವಿದ್ಯಾಲಯದ ಪರವಾಗಿ ಕುಲಸಚಿವರು ಮಾಡಿಕೊಳ್ಳತಕ್ಕದ್ದು ಮತ್ತು ಅದಕ್ಕೆ ಸಹಿ ಹಾಕತಕ್ಕದ್ದು.

(3) ಕುಲಸಚಿವರು ವಿಶ್ವವಿದ್ಯಾಲಯದ ಪರವಾಗಿ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಪರಿನಿಯಮಗಳಿಂದ ಪ್ರದತ್ತಗೊಳಿಸಬಹುದಾದಂಥ ಅಥವಾ ಕುಲಾಧಿಪತಿಯವರು, ಸಹ-ಕುಲಾಧಿಪತಿಯವರು ಅಥವಾ ಕುಲಪತಿಯವರು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು ವಿಶ್ವವಿದ್ಯಾಲಯದ ದಾಖಲೆಗಳು ಮತ್ತು ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು, ಸಹ-ಕುಲಾಧಿಪತಿಯವರು, ಕುಲಪತಿಯವರು ಅಥವಾ ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಅಂಥ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿತಕ್ಕದ್ದು.

**21. ಹಣಕಾಸು ಅಧಿಕಾರಿ.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು, ಪರಿನಿಯಮಗಳ ಮೂಲಕ ಪ್ರದತ್ತಗೊಳಿಸಬಹುದಾದ ಅಂಥ ವಿಧಾನದಲ್ಲಿ ಹಣಕಾಸು ಅಧಿಕಾರಿಯನ್ನು ನೇಮಕ ಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**22. ಇತರ ಅಧಿಕಾರಿಗಳು.–** ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ ನೇಮಕಾತಿಯ ವಿಧಾನ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಕರ್ತವ್ಯಗಳು ಪರಿನಿಯಮಗಳ ಮೂಲಕ ಹೇಳಬಹುದಾದಂತೆ ಇರತಕ್ಕದ್ದು.

## ಅಧ್ಯಾಯ – IV

### ವಿಶ್ವವಿದ್ಯಾಲಯದ ಪ್ರಾಧಿಕಾರಗಳು

**23. ವಿಶ್ವವಿದ್ಯಾಲಯದ ಪ್ರಾಧಿಕಾರಗಳು.–** ಈ ಮುಂದಿನವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:–

(i) ಪ್ರಬಂಧಕ ಮಂಡಳಿ;

(ii) ವ್ಯವಸ್ಥಾಪನಾ ಮಂಡಳಿ;

(iii) ಶೈಕ್ಷಣಿಕ ಪರಿಷತ್ತು;

(iv) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು;

(v) ಹಣಕಾಸು ಸಮಿತಿ; ಮತ್ತು

(vi) ವಿಶ್ವವಿದ್ಯಾಲಯದ ಪ್ರಾಧಿಕಾರಗಳೆಂದು ಪರಿನಿಯಮಗಳ ಮೂಲಕ ಘೋಷಿಸಬಹುದಾದ ಅಂಥ ಇತರ ಪ್ರಾಧಿಕಾರಗಳು.

**24. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು.–** (1) ಪ್ರಬಂಧಕ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು – ಅಧ್ಯಕ್ಷರು;

(ii) ಸಹ-ಕುಲಾಧಿಪತಿಯವರು – ಸದಸ್ಯರು;

(iii) ಕುಲಪತಿಯವರು – ಸದಸ್ಯರು;

(iv) ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(v) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ. ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(vi) ರಾಜ್ಯ ಸರ್ಕಾರವು ನಾಮ ನಿರ್ದೇಶನ ಮಾಡಿದ ಆಡಳಿತವನ್ನು ಒಳಗೊಂಡಂತೆ ವ್ಯವಸ್ಥಾಪನೆ, ಹಣಕಾಸು ಅಥವಾ ಯಾವುದೇ ಇತರ ವಿಶೇಷ ಕ್ಷೇತ್ರದಲ್ಲಿನ ಒಬ್ಬರು ತಜ್ಞರು;

(vii) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಮೂವರು ವ್ಯಕ್ತಿಗಳು ಅವರ ಪೈಕಿ ಒಬ್ಬರು ಮಹಿಳೆಯಾಗಿರತಕ್ಕದ್ದು;

(viii) ಸಹ ಕುಲಪತಿಯವರು ಮತದಾನದ ಹಕ್ಕಿಲ್ಲದ ಸದಸ್ಯರಾಗಿರತಕ್ಕದ್ದು;

(ix) ವಿಶ್ವವಿದ್ಯಾಲಯ ಅನುದಾನ ಆಯೋಗದ ನಾಮನಿರ್ದೇಶಿತ ಒಬ್ಬ ಸುಪ್ರಸಿದ್ಧ ಶಿಕ್ಷಣ ತಜ್ಞರು.

(2) ಕುಲಸಚಿವರು ಪ್ರಬಂಧಕ ಮಂಡಳಿಯ ಮತ ದಾನದ ಹಕ್ಕಿರದ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ಪ್ರಬಂಧಕ ಮಂಡಳಿಯ ಸದಸ್ಯರ ಪದಾವಧಿ, ಸರ್ಕಾರದಿಂದ ನಾಮನಿರ್ದೇಶಿತರಾದ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ನೇಮಕಾತಿ, ನವೀಕರಣ ಮತ್ತು ತೆಗೆದುಹಾಕುವುದು ಮುಂತಾದವುಗಳು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಾಧಿಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯಿಂದ ನಾಮನಿರ್ದೇಶಿತರಾದ ಯಾರಾದರೂ ಒಬ್ಬರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು. ಅಂಥ ಸಭೆಯ ಅಧ್ಯಕ್ಷತೆಯನ್ನು ವಹಿಸುವುದಕ್ಕೆ ಪ್ರಾಯೋಜಕ ಸಂಸ್ಥೆಯು ಯಾವೊಬ್ಬ ವ್ಯಕ್ತಿಯನ್ನೂ ನಾಮನಿರ್ದೇಶನ ಮಾಡಿರದಿದ್ದಲ್ಲಿ, ಸಭೆಯಲ್ಲಿ ಹಾಜರಿರುವ ಸದಸ್ಯರು ಸರಳ ಬಹುಮತದ ಮೂಲಕ ಅವರುಗಳ ಪೈಕಿಯಿಂದಲೇ ಆ ಸಭೆಗೆ ಮಾತ್ರವೇ ಅಧ್ಯಕ್ಷನನ್ನು ಚುನಾಯಿಸತಕ್ಕದ್ದು.

(5) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಿಗೆ, ಅಂಥ ಸಭೆಯಲ್ಲಿ ಹಾಜರಾಗುವ ಮತ್ತು ಮತದಾನ ನೀಡುವ ಮೂರು ಜನ ಸದಸ್ಯರು ಗಣಪೂರ್ತಿ (ಕೋರಂ) ಆಗಿರತಕ್ಕದ್ದು:

ಪರಂತು, ಪ್ರಬಂಧಕ ಮಂಡಳಿಯ ಯಾವುದೇ ಸಭೆಯ ಕೋರಂ ಪೂರ್ಣವಾಗಬೇಕಾದರೆ ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಿರುವುದು ಮತ್ತು ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ನಾಮನಿರ್ದೇಶಿತರು ಹಾಜರಾಗದೇ ಇದ್ದಾಗ ಕುಲಪತಿಯವರು ಹಾಜರಿರುವುದು ಯಾವಾಗಲೂ ಅವಶ್ಯವಾಗಿರತಕ್ಕದ್ದು.

(6) ಪ್ರಬಂಧಕ ಮಂಡಳಿಯು ವಿಶ್ವವಿದ್ಯಾಲಯದ ಪ್ರಧಾನ ಪ್ರಬಂಧಕ ಸಂಸ್ಥೆಯಾಗಿರತಕ್ಕದ್ದು ಮತ್ತು ಅದು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಕಗೊಳಿಸುವುದು;

(ii) ವಿಶ್ವವಿದ್ಯಾಲಯವು ಅನುಸರಿಸಬೇಕಾದ ಕಾರ್ಯನೀತಿಗಳನ್ನು ರಚಿಸುವುದು;

(iii) ಈ ಅಧಿನಿಯಮದ ಅಥವಾ ಪರಿನಿಯಮಗಳ ಅಥವಾ ನಿಯಮಗಳ ಉಪಬಂಧಗಳಿಗೆ ಅನುಗುಣವಾಗಿ ಇರದ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ತೀರ್ಮಾನಗಳನ್ನು ಪುನರೀಕ್ಷಿಸುವುದು;

(iv) ವಿಶ್ವವಿದ್ಯಾಲಯದ ಆಯವ್ಯಯ ಮತ್ತು ವಾರ್ಷಿಕ ವರದಿಗಳನ್ನು ಅನುಮೋದಿಸುವುದು;

(v) ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸುವುದು ಅಥವಾ ಈಗಾಗಲೇ ಇರುವ ಪರಿನಿಯಮಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವುದು ಅಥವಾ ನಿರಸನಗೊಳಿಸುವುದು;

(vi) ವಿಶ್ವವಿದ್ಯಾಲಯವನ್ನು ಸ್ವಯಂಸಮಾಪನಗೊಳಿಸುವ ನಿರ್ಧಾರವನ್ನು ತೆಗೆದುಕೊಳ್ಳುವುದು;

(vii) ಸರ್ಕಾರಕ್ಕೆ ಸಲ್ಲಿಸುವ ಪ್ರಸ್ತಾವಗಳನ್ನು ಅನುಮೋದಿಸುವುದು;

(viii) ಶುಲ್ಕ ನಿಯಂತ್ರಣ ಸಮಿತಿಗೆ ಮೂವರು ಸದಸ್ಯರನ್ನು ನಾಮನಿರ್ದೇಶನ ಮಾಡುವುದು;

(ix) ವಿಶ್ವವಿದ್ಯಾಲಯದ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕೆ ಅಪೇಕ್ಷಣೀಯವೆಂದು ಕಂಡುಬರುವಂಥ ತೀರ್ಮಾನಗಳನ್ನು ಮತ್ತು ಕ್ರಮಗಳನ್ನು ಕೈಗೊಳ್ಳುವುದು.

(7) ಪ್ರಬಂಧಕ ಮಂಡಳಿಯು ಒಂದು ವರ್ಷದಲ್ಲಿ ಕನಿಷ್ಠ ಮೂರು ಸಲ ಸಭೆ ಸೇರತಕ್ಕದ್ದು.

(8) ಪ್ರಬಂಧಕ ಮಂಡಳಿಯು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಸಮಯ ಮತ್ತು ಸ್ಥಳದಲ್ಲಿ ಸಭೆ ಸೇರತಕ್ಕದ್ದು.

**25. ವ್ಯವಸ್ಥಾಪನಾ ಮಂಡಳಿ.-** (1) ವ್ಯವಸ್ಥಾಪನಾ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಗಳು;

(ii) ಸಹಕುಲಪತಿಗಳು;

(iii) ಕುಲಸಚಿವರು;

(iv) ಪ್ರಾಯೋಜಕ ಸಂಸ್ಥೆಯ ಇಬ್ಬರು ನಾಮನಿರ್ದೇಶಿತರು;

(v) ಕುಲಪತಿಗಳು ನಾಮನಿರ್ದೇಶಿಸಬಹುದಾದ ವಿದ್ಯಾಲಯಗಳ ಇಬ್ಬರು ಡೀನ್‌ಗಳು;

(2) ಕುಲಪತಿಯವರು ವ್ಯವಸ್ಥಾಪನಾ ಮಂಡಳಿಯ ಅಧ್ಯಕ್ಷರಾಗಿರತಕ್ಕದ್ದು ಮತ್ತು ಕುಲಸಚಿವರು ವ್ಯವಸ್ಥಾಪನಾ ಮಂಡಳಿಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ವ್ಯವಸ್ಥಾಪನಾ ಮಂಡಳಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ವ್ಯವಸ್ಥಾಪನಾ ಮಂಡಳಿಯ ಎಲ್ಲಾ ಸಭೆಗಳಲ್ಲಿ ಯಾವಾಗಲೂ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು ಹಾಗೂ ಕುಲಪತಿಯವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೇ ಇದ್ದ ಸಂದರ್ಭದಲ್ಲಿ ಸಭೆಯಲ್ಲಿ ಹಾಜರಿರುವ ಸದಸ್ಯರು ಚುನಾಯಿಸಿದ ಯಾವುದೇ ಇತರ ಸದಸ್ಯರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ವ್ಯವಸ್ಥಾಪನಾ ಮಂಡಳಿಯ ಸಭೆಯಲ್ಲಿ ಯಾವುದೇ ವಿಷಯವನ್ನು ಕುರಿತು ವಿವಾದ ಉಂಟಾದಲ್ಲಿ ಸದರಿ ವಿಷಯವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯದ ಬಗ್ಗೆ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**26. ಶೈಕ್ಷಣಿಕ ಪರಿಷತ್ತು**.-(1) ಶೈಕ್ಷಣಿಕ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಯವರು - ಅಧ್ಯಕ್ಷರು

(ii) ಸಹಕುಲಪತಿಯವರು - ಸದಸ್ಯರು

(iii) ಕುಲಸಚಿವರು - ಕಾರ್ಯದರ್ಶಿಗಳು

(iv) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಶೈಕ್ಷಣಿಕ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಶೈಕ್ಷಣಿಕ ಸಂಸ್ಥೆಯಾಗಿರತಕ್ಕದ್ದು ಮತ್ತು ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಹಾಗೂ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**27. ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು**.- (1) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಸಂಶೋಧನಾ ಮತ್ತು ಅನ್ವೇಷಣಾ ಸಮಿತಿಯಾಗಿರತಕ್ಕದ್ದು ಹಾಗೂ ಸಂಶೋಧನಾ ಕ್ಷೇತ್ರಗಳ ಆದ್ಯತೆಯೂ ಒಳಗೊಂಡಂತೆ, ವಿಶ್ವವಿದ್ಯಾಲಯವು ಕೈಗೊಳ್ಳಬೇಕಾದ ಸಂಶೋಧನೆಯ ಬಗ್ಗೆ ಒಂದು ವ್ಯಾಪಕವಾದ ಪರಿಪೂರ್ಣ ಭವಿಷ್ಯದ್ ದೃಷ್ಟಿಯನ್ನು ಒದಗಿಸತಕ್ಕದ್ದು. ಈ ಪರಿಷತ್ತು, ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಮತ್ತು ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಸಂಶೋಧನೆ ಮತ್ತು ಅನ್ವೇಷಣಾ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಯವರು - ಅಧ್ಯಕ್ಷರು

(ii) ಸಹಕುಲಪತಿಯವರು - ಸದಸ್ಯರು

(iii) ಸಂಶೋಧನೆಯ ಡೀನ್ - ಕಾರ್ಯದರ್ಶಿ

(iv) ಅನ್ವೇಷಣಾ ವಿಭಾಗದ ಮುಖ್ಯಸ್ಥರು - ಸದಸ್ಯರು

(v) ಎಲ್ಲಾ ವ್ಯಾಸಂಗ ವಿಭಾಗಗಳ ಡೀನ್‌ಗಳು - ಸದಸ್ಯರು ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

**28. ಹಣಕಾಸು ಸಮಿತಿ.**– (1) ಹಣಕಾಸು ಸಮಿತಿ ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

| | | |
|---|---|---|
| (i) | ಕುಲಾಧಿಪತಿಯವರು ಅಥವಾ ಅವರ ನಾಮನಿರ್ದೇಶಿತರು | – ಅಧ್ಯಕ್ಷರು |
| (ii) | ಸಹ–ಕುಲಾಧಿಪತಿಯವರು | – ಸದಸ್ಯರು |
| (iii) | ಕುಲಪತಿಯವರು | – ಸದಸ್ಯರು |
| (iv) | ಕುಲಸಚಿವರು | – ಸದಸ್ಯರು |
| (v) | ಹಣಕಾಸು ಅಧಿಕಾರಿ | – ಕಾರ್ಯದರ್ಶಿ |
| (vi) | ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು | – ಸದಸ್ಯರು; ಮತ್ತು |
| (vii) | ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು. | |

(2) ಹಣಕಾಸು ಸಮಿತಿಯು ಹಣಕಾಸಿನ ವಿಷಯಗಳನ್ನು ಕೈಗೊಳ್ಳುವ ವಿಶ್ವವಿದ್ಯಾಲಯದ ಪ್ರಧಾನ ಹಣಕಾಸು ಸಂಸ್ಥೆಯಾಗಿರತಕ್ಕದ್ದು ಹಾಗೂ ಅದು ಈ ಅಧಿನಿಯಮ, ನಿಯಮಗಳು ಮತ್ತು ಪರಿನಿಯಮಗಳ ಉಪಬಂಧಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಹಣಕಾಸು ವಿಷಯಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**29. ಇತರ ಪ್ರಾಧಿಕಾರಗಳು.**– ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ರಚನೆ, ಅಧಿಕಾರಗಳು ಹಾಗೂ ಪ್ರಕಾರ್ಯಗಳು ಪರಿನಿಯಮಗಳಿಂದ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

**30. ಒಂದು ಪ್ರಾಧಿಕಾರದ ಅಥವಾ ಸಂಸ್ಥೆಯ ಸದಸ್ಯತ್ವಕ್ಕೆ ಅನರ್ಹತೆ.**– ವಿಶ್ವವಿದ್ಯಾಲಯದ ಸಂಸ್ಥೆಗಳ ಯಾವುವೇ ಪ್ರಾಧಿಕಾರಗಳ ಒಬ್ಬ ವ್ಯಕ್ತಿಯು,–

(ಎ) ಅಸ್ವಸ್ಥ ಚಿತ್ತನಾಗಿದ್ದು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿಸಲ್ಪಟ್ಟಿದ್ದರೆ;

(ಬಿ) ಅವಿಮುಕ್ತ ದಿವಾಳಿಯಾಗಿದ್ದರೆ;

(ಸಿ) ನೈತಿಕ ಅಧಃಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದರೆ;

(ಡಿ) ಖಾಸಗಿ ಬೋಧನಾ ತರಗತಿಗಳನ್ನು ನಡೆಸುತ್ತಿದ್ದರೆ ಅಥವಾ ಸ್ವತಃ ನಿರತನಾಗಿದ್ದರೆ;

(ಇ) ಯಾವುದೇ ವಿಧದಲ್ಲಿ, ಎಲ್ಲಿಯೇ, ಯಾವುದೇ ಪರೀಕ್ಷೆಯನ್ನು ನಡೆಸುವಲ್ಲಿ ಅನುಚಿತ ಅಭ್ಯಾಸದಲ್ಲಿ ತೊಡಗಿದ್ದಕ್ಕಾಗಿ ಅಥವಾ ಉತ್ತೇಜಿಸಿದ್ದಕ್ಕಾಗಿ ದಂಡಿತನಾಗಿದ್ದರೆ;

(ಎಫ್) ಪ್ರಾಯೋಜಿತ ಸಂಸ್ಥೆಯು ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಯಾವೊಬ್ಬ ಸದಸ್ಯನನ್ನು ಆ ಪದವನ್ನು ಹೊಂದಿರುವುದಕ್ಕೆ ಅರ್ಹನಲ್ಲನೆಂದು ಲಿಖಿತದಲ್ಲಿ ಅಭಿಪ್ರಾಯ ನೀಡಿದಾಗಲೆಲ್ಲಾ,

–ಸದಸ್ಯನಾಗಿರುವುದಕ್ಕೆ ಅನರ್ಹನಾಗತಕ್ಕದ್ದು.

**31. ಖಾಲಿಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ.**– ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಕಾರ್ಯ ಅಥವಾ ವ್ಯವಹರಣೆಗಳು ಕೇವಲ ಅದರಲ್ಲಿ ಯಾವುದೇ ಖಾಲಿಸ್ಥಾನ ಇದೆ ಎಂಬ ಕಾರಣದಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣದಿಂದ ಮಾತ್ರವೇ ಅಸಿಂಧುವಾಗತಕ್ಕದ್ದಲ್ಲ.

**32. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು.**– (1) ಯಾವುವೇ ಕಾರ್ಯಸೂಚಿ ವಿಷಯಗಳನ್ನು ಕುಲಾಧಿಪತಿಯವರ ಪೂರ್ವಾನುಮೋದನೆಯನ್ನು ಪಡೆಯದೇ ಪ್ರಬಂಧಕ ಮಂಡಳಿಯ ಅಥವಾ ಕಾರ್ಯಕಾರಿ ಪರಿಷತ್ತು ಅಥವಾ ಯಾವುದೇ ಸಮಿತಿಯ ಸಭೆಗಳ ಕಾರ್ಯಸೂಚಿ ವಿಷಯಗಳಲ್ಲಿ ಸೇರಿಸತಕ್ಕದ್ದಲ್ಲ ಅಥವಾ ಚರ್ಚೆಗೆ ತೆಗೆದುಕೊಳ್ಳತಕ್ಕದ್ದಲ್ಲ ಮತ್ತು ತೀರ್ಮಾನಿಸತಕ್ಕದ್ದಲ್ಲ.

(2) ಈ ಅಧಿನಿಯಮದ ಯಾವುದೇ ಉಪಬಂಧಗಳನ್ನು ಪಾಲಿಸದೆ ಇರುವ ಸಂದರ್ಭದಲ್ಲಿ, ಕುಲಾಧಿಪತಿಯವರು ವಿಶ್ವವಿದ್ಯಾಲಯದ ಯಾವುದೇ ಪದಾಧಿಕಾರಿ ಅಥವಾ ಸಂಸ್ಥೆಯು ತೆಗೆದುಕೊಂಡ ಎಲ್ಲಾ ತೀರ್ಮಾನಗಳನ್ನು ವಿಪರ್ಯಯಗೊಳಿಸುವ ಮೂಲಕ ಪರಿಹಾರ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಅಧಿಕಾರವನ್ನು ಎಲ್ಲಾ ಸಮಯದಲ್ಲಿ

ಹೊಂದಿರತಕ್ಕದ್ದು ಮತ್ತು ಅಂಥ ಪರಿಹಾರ ಕ್ರಮದ ಪರಿಣಾಮವಾಗಿ ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ವಿಶ್ವವಿದ್ಯಾಲಯದ ಪದಾಧಿಕಾರಿ ಅಥವಾ ಸಂಸ್ಥೆಯು ಕೈಗೊಂಡಿದ್ದ ಎಲ್ಲಾ ಅಂಥ ಕ್ರಮಗಳು, ಮೊದಲಿನಿಂದಲೂ ಶೂನ್ಯ ಮತ್ತು ಅಕೃತ ಎಂದು ಭಾವಿಸತಕ್ಕದ್ದು ಹಾಗೂ ತತ್ಪರಿಣಾಮವಾಗಿ, ಉಪಬಂಧ ಪಾಲಿಸದೇ ಇದ್ದ ವಿಷಯ ಅಥವಾ ನಿರ್ಧಾರದ ಸಂಬಂಧದಲ್ಲಿ ಅದಕ್ಕೆ ಮುಂಚೆ ಇದ್ದ ವಸ್ತುಸ್ಥಿತಿಯೇ ಮುಂದುವರಿಯತಕ್ಕದ್ದು.

## ಅಧ್ಯಾಯ – V

## ಪರಿನಿಯಮಗಳು ಮತ್ತು ವಿನಿಯಮಗಳು

33. **ಪರಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಪರಿನಿಯಮಗಳು ವಿಶ್ವವಿದ್ಯಾಲಯಕ್ಕೆ ಮತ್ತು ಸಿಬ್ಬಂದಿಗೆ ಸಂಬಂಧಿಸಿದ ಎಲ್ಲಾ ಅಥವಾ ಯಾವುದೇ ವಿಷಯಕ್ಕೆ ಈ ಕೆಳಗಿನಂತೆ ಉಪಬಂಧ ಕಲ್ಪಿಸಬಹುದು, ಎಂದರೆ:-

(i) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಕಾರ್ಯಕಲಾಪಗಳನ್ನು ನಡೆಸುವ ಮತ್ತು ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸದಿರುವ ಸಂಸ್ಥೆಗಳ ರಚನೆಯ ಕಾರ್ಯವಿಧಾನ;

(ii) ಶಾಶ್ವತ ಶಾಸನಬದ್ಧ ದತ್ತಿ ನಿಧಿ, ವಿಶ್ವವಿದ್ಯಾಲಯ ದತ್ತಿ ನಿಧಿ, ಸಾಮಾನ್ಯ ನಿಧಿ ಹಾಗೂ ಅಭಿವೃದ್ಧಿ ನಿಧಿಗಳ ನಿರ್ವಹಣೆ;

(iii) ಕುಲಪತಿಗಳು, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರ ನೇಮಕಾತಿಯ ನಿಬಂಧನೆಗಳು ಹಾಗೂ ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಪ್ರಕಾರ್ಯಗಳು;

(iv) ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ, ಅಧ್ಯಾಪಕರ ಮತ್ತು ನೌಕರರ ನೇಮಕಾತಿ ವಿಧಾನ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(v) ವಿಶ್ವವಿದ್ಯಾಲಯ ಹಾಗೂ ಅದರ ಅಧಿಕಾರಿಗಳು, ವ್ಯಾಸಂಗ ವಿಭಾಗದ (ಫ್ಯಾಕಲ್ಟಿ) ಸದಸ್ಯರು, ನೌಕರರು ಹಾಗೂ ವಿದ್ಯಾರ್ಥಿಗಳ ನಡುವೆ ಉಂಟಾದ ವಿವಾದಗಳನ್ನು ಪರಿಹರಿಸುವ ಕಾರ್ಯವಿಧಾನ;

(vi) ವಿಭಾಗಗಳು ಮತ್ತು ವ್ಯಾಸಂಗ ವಿಭಾಗಗಳ (ಫ್ಯಾಕಲ್ಟಿಗಳ) ಸೃಜನೆ, ರದ್ಧತಿ ಅಥವಾ ಪುನಾರಚನೆ;

(vii) ಇತರ ವಿಶ್ವವಿದ್ಯಾಲಯಗಳು ಅಥವಾ ಉನ್ನತ ಕಲಿಕಾ ಸಂಸ್ಥೆಗಳ ಜೊತೆಯಲ್ಲಿ ಸಹಕರಿಸಬೇಕಾದ ರೀತಿ;

(viii) ಗೌರವ ಪದವಿಗಳ ನೀಡಿಕೆಯ ಕಾರ್ಯವಿಧಾನ;

(ix) ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿವೇತನ ಮಂಜೂರಾತಿಗೆ ಸಂಬಂಧಿಸಿದ ಉಪಬಂಧಗಳು;

(x) ವಿವಿಧ ವ್ಯಾಸಂಗ ಕ್ರಮಗಳಲ್ಲಿನ ಸೀಟುಗಳ ಸಂಖ್ಯೆಗೆ ಸಂಬಂಧಿಸಿದ ಕಾರ್ಯನೀತಿಗಳು ಮತ್ತು ಅಂಥ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಕಾರ್ಯವಿಧಾನ;

(xi) ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಶುಲ್ಕಕ್ಕೆ ಸಂಬಂಧಿಸಿದ ಕಾರ್ಯನೀತಿ;

(xii) ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಉಚಿತ ಶಿಕ್ಷಣ, ಪದಕಗಳು ಹಾಗೂ ಬಹುಮಾನಗಳನ್ನು ಪ್ರಾರಂಭಿಸುವುದು;

(xiii) ಹುದ್ದೆಗಳ ಸೃಜನೆ ಮತ್ತು ರದ್ಧತಿಗಾಗಿನ ಕಾರ್ಯವಿಧಾನ ;

(xiv) ಪ್ರಬಂಧಕ ಮಂಡಳಿಯು ನಿರ್ಧರಿಸಬಹುದಾದ ಅಥವಾ ಈ ಅಧಿನಿಯಮದ ಅಡಿಯಲ್ಲಿ ಪರಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬೇಕಾದ ಅಗತ್ಯತೆಯುಳ್ಳ ಯಾವುದೇ ಇತರ ವಿಷಯಗಳು.

34. **ಪರಿನಿಯಮಗಳ ರಚನೆ ವಿಧಾನ.–** (1) ವ್ಯವಸ್ಥಾಪನಾ ಮಂಡಳಿಯು ರಚಿಸಿದ ಮೊದಲ ಪರಿನಿಯಮಗಳನ್ನು ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ವ್ಯವಸ್ಥಾಪನಾ ಮಂಡಳಿಯು ಸಲ್ಲಿಸಿದ ಮೊದಲ ಪರಿನಿಯಮಗಳನ್ನು ಪ್ರಬಂಧಕ ಮಂಡಳಿಯು ಪರಿಗಣಿಸತಕ್ಕದ್ದು ಹಾಗೂ ತಾನು ಅವಶ್ಯವೆಂದು ಭಾವಿಸಬಹುದಾದ ಅಂಥ ಮಾರ್ಪಾಡುಗಳು, ಯಾವುದಾದರು ಇದ್ದಲ್ಲಿ, ಅವುಗಳೊಡನೆ ತನ್ನ ಅನುಮೋದನೆಯನ್ನು ನೀಡತಕ್ಕದ್ದು.

(3) ವಿಶ್ವವಿದ್ಯಾಲಯವು, ಪ್ರಬಂಧಕ ಮಂಡಳಿಯು ಅನುಮೋದಿಸಿದ ಮೊದಲ ಪರಿನಿಯಮಗಳನ್ನು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ಪ್ರಕಟಿಸತಕ್ಕದ್ದು ಮತ್ತು ತದನಂತರ ಮೊದಲ ಪರಿನಿಯಮಗಳ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

35. **ಪರಿನಿಯಮಗಳ ತಿದ್ದುಪಡಿಯ ಅಧಿಕಾರ.**– ಪ್ರಬಂಧಕ ಮಂಡಳಿಯು ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸಬಹುದು ಅಥವಾ ಪರಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ಅವನ್ನು ನಿರಸನಗೊಳಿಸಬಹುದು.

36. **ವಿನಿಯಮಗಳು.**– ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ವಿನಿಯಮಗಳು ಈ ಮುಂದಿನ ವಿಷಯಗಳಿಗೆ ಉಪಬಂಧಗಳನ್ನು ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ವಿದ್ಯಾರ್ಥಿ ಪಟ್ಟಿಯಲ್ಲಿ ಅವರುಗಳ ದಾಖಲಾತಿ ಹಾಗೂ ಮುಂದುವರಿಕೆ;

(ii) ವಿಶ್ವವಿದ್ಯಾಲಯದ ಎಲ್ಲಾ ಪದವಿಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ನಿಗದಿಪಡಿಸತಕ್ಕ ವ್ಯಾಸಂಗ ಕ್ರಮಗಳು;

(iii) ಪದವಿಗಳ ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರದಾನ;

(iv) ಸಂಶೋಧನಾ ವೇತನಗಳು (ಫೆಲೋಶಿಪ್), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಪದಕಗಳು ಮತ್ತು ಬಹುಮಾನಗಳನ್ನು ನೀಡಲು ಷರತ್ತುಗಳು;

(v) ಪರೀಕ್ಷೆಗಳನ್ನು ನಡೆಸುವುದು ಹಾಗೂ ಪರೀಕ್ಷೆ ನಡೆಸುವ ಸಂಸ್ಥೆಗಳು, ಪರೀಕ್ಷಕರು, ಪರೀಕ್ಷಾ ಮೇಲ್ವಿಚಾರಕರು, ಟ್ಯಾಬುಲೇಟರ್‌ಗಳು ಮತ್ತು ಮಾಡರೇಟರ್‌ಗಳ ನೇಮಕಾತಿ ಷರತ್ತುಗಳು ಮತ್ತು ವಿಧಾನ ಹಾಗೂ ಅವರ ಕರ್ತವ್ಯಗಳು;

(vi) ವಿಶ್ವವಿದ್ಯಾಲಯದ ಪರೀಕ್ಷೆಗಳಿಗೆ, ಪದವಿಗಳಿಗೆ ಹಾಗೂ ಇತರ ಶೈಕ್ಷಣಿಕ ಪ್ರಶಸ್ತಿಗಳಿಗೆ ಪ್ರವೇಶಕ್ಕೆ ವಿಧಿಸತಕ್ಕ ಶುಲ್ಕ;

(vii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನಲ್ಲಿ ವಿದ್ಯಾರ್ಥಿಗಳ ನಿವಾಸಕ್ಕಾಗಿ ಷರತ್ತುಗಳು;

(viii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಶಿಸ್ತು ಪಾಲನೆ;

(ix) ಈ ಅಧಿನಿಯಮದ ಅಡಿಯಲ್ಲಿನ ಪರಿನಿಯಮಗಳಲ್ಲಿ ಉಪಬಂಧ ಕಲ್ಪಿಸಬಹುದಾಂಥ ಇತರ ಎಲ್ಲಾ ವಿಷಯಗಳು.

37. **ವಿನಿಯಮಗಳ ರಚನೆ ವಿಧಾನ.**– ವಿನಿಯಮಗಳನ್ನು ಶೈಕ್ಷಣಿಕ ಪರಿಷತ್ತು ರಚಿಸತಕ್ಕದ್ದು ಹಾಗೂ ವ್ಯವಸ್ಥಾಪನಾ ಮಂಡಳಿಯು ಅನುಮೋದಿಸತಕ್ಕದ್ದು.

38. **ವಿನಿಯಮಗಳ ತಿದ್ದುಪಡಿಗೆ ಅಧಿಕಾರ.**– ವ್ಯವಸ್ಥಾಪನಾ ಮಂಡಳಿಯ ಅನುಮೋದನೆಯೊಡನೆ ಶೈಕ್ಷಣಿಕ ಪರಿಷತ್ತು ಹೊಸ ವಿನಿಯಮಗಳನ್ನು ಅಥವಾ ಹೆಚ್ಚುವರಿ ವಿನಿಯಮಗಳನ್ನು ರಚಿಸಬಹುದು ಅಥವಾ ವಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ನಿರಸನಗೊಳಿಸಬಹುದು.

39. **ಶುಲ್ಕ ನಿಗಧಿ.**– (1) 9ನೇ ಪ್ರಕರಣದ ಪರಂತುಕದ ಅಡಿಯಲ್ಲಿ ರಾಜ್ಯ ಸರ್ಕಾರದ ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡಲಾದ ಪ್ರವೇಶಗಳಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳಲ್ಲಿನ ಶೇಕಡಾ ನಲವತ್ತರಷ್ಟು ಪ್ರವೇಶಗಳ ಸಂಬಂಧದಲ್ಲಿ ಶುಲ್ಕವು ಸರ್ಕಾರ ಮತ್ತು ವಿಶ್ವವಿದ್ಯಾಲಯವು ಸಮ್ಮತಾಭಿಪ್ರಾಯದ ಒಪ್ಪಂದದ ಪ್ರಕಾರ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) ಅಧಿನಿಯಮ, 2006ರ (2006ರ ಕರ್ನಾಟಕ ಅಧಿನಿಯಮ 8) ಅನುಸಾರವಾಗಿ ಸರ್ಕಾರಿ ಸೀಟುಗಳಿಗಾಗಿ ರಾಜ್ಯ ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸಿದಂತೆ ಇರತಕ್ಕದ್ದು.

(2) ವಿಶ್ವವಿದ್ಯಾಲಯದ ಇತರ ಸೀಟುಗಳಿಗೆ ಸಂಬಂಧಿಸಿದಂತೆ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳು (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) ಅಧಿನಿಯಮ, 2006ರ (2006ರ ಕರ್ನಾಟಕ ಅಧಿನಿಯಮ 8) 6ನೇ ಪ್ರಕರಣದ ಉಪಬಂಧಗಳ ಅನುಸಾರವಾಗಿ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರ ಅಧ್ಯಕ್ಷತೆಯ ಅಡಿಯಲ್ಲಿ ರಚಿಸಲಾದ ಶುಲ್ಕ

ಯಂತ್ರಣ ಸಮಿತಿಯ ಮೂಲಕ ಶುಲ್ಕವನ್ನು ನಿಗದಿಪಡಿಸತಕ್ಕದ್ದು. ಈ ಪ್ರಕರಣದ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವನ್ನು ಖಾಸಗಿ ಅನುದಾನರಹಿತ ವೃತ್ತಿಪರ ಶಿಕ್ಷಣ ಸಂಸ್ಥೆ ಎಂದು ಭಾವಿಸತಕ್ಕದ್ದು.

## ಅಧ್ಯಾಯ – VI

### ಸಂಕೀರ್ಣ

**40. ನೌಕರರ ಸೇವಾ ಷರತ್ತುಗಳು.–** (1) ಪರಿನಿಯಮಗಳ ಮತ್ತು ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಥವಾ ನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳು, ಯಾವುದಾದರೂ ಇದ್ದಲ್ಲಿ, ಅವುಗಳಿಗೆ ಒಳಪಟ್ಟು ಪ್ರತಿಯೊಬ್ಬ ನೌಕರನು ಲಿಖಿತ ಕರಾರಿನ ಅಡಿಯಲ್ಲಿ ನೇಮಕಗೊಳ್ಳತಕ್ಕದ್ದು ಮತ್ತು ಅದನ್ನು ವಿಶ್ವವಿದ್ಯಾಲಯದಲ್ಲಿ ಇಟ್ಟುಕೊಳ್ಳತಕ್ಕದ್ದು ಹಾಗೂ ಅದರ ಪ್ರತಿಯನ್ನು ಸಂಬಂಧಪಟ್ಟ ನೌಕರನಿಗೆ ನೀಡತಕ್ಕದ್ದು.

(2) ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಕಾರ್ಯವಿಧಾನಗಳ ಮೂಲಕ ನಿಯಂತ್ರಿಸತಕ್ಕದ್ದು.

(3) ಕರಾರಿನಿಂದಾಗಿ ವಿಶ್ವವಿದ್ಯಾಲಯ ಮತ್ತು ನೌಕರನ ಮಧ್ಯದಲ್ಲಿ ಉದ್ಭವಿಸಬಹುದಾದ ಯಾವುದೇ ವಿವಾದವನ್ನು, ಲಿಖಿತ ಕರಾರಿನಲ್ಲಿ ಉಪಬಂಧಿಸಿದ ವಿಧಾನದಲ್ಲಿ ಹಾಗೂ ಪರಿನಿಯಮಗಳ ಅನುಸಾರವಾಗಿ ಪರಿಹರಿಸತಕ್ಕದ್ದು.

**41. ಮೇಲ್ಮನವಿ ಹಕ್ಕು.–** ವಿಶ್ವವಿದ್ಯಾಲಯವು ತನ್ನ ನೌಕರರ ಅಥವಾ ವಿದ್ಯಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡ ಸಂದರ್ಭದಲ್ಲಿ, ಬಾಧಿತ ನೌಕರ ಅಥವಾ ವಿದ್ಯಾರ್ಥಿಗಳು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಅಂಥ ಪ್ರಾಧಿಕಾರಕ್ಕೆ ಮೇಲ್ಮನವಿ ಸಲ್ಲಿಸುವ ಹಕ್ಕನ್ನು ಹೊಂದಿರತಕ್ಕದ್ದು.

**42. ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿ .–** ವಿಶ್ವವಿದ್ಯಾಲಯವು, ತನ್ನ ನೌಕರರ ಪ್ರಯೋಜನಕ್ಕಾಗಿ, ಪರಿನಿಯಮಗಳು ಮತ್ತು ಜಾರಿಯಲ್ಲಿರುವ ಕಾನೂನುಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿಯನ್ನು ರಚಿಸತಕ್ಕದ್ದು ಹಾಗೂ ಅಂಥ ವಿಮಾ ಯೋಜನೆಗಳನ್ನು ಒದಗಿಸತಕ್ಕದ್ದು.

**43. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಇತರ ಸಂಸ್ಥೆಯ ಸದಸ್ಯನಾಗಿ ಯಾವೊಬ್ಬ ವ್ಯಕ್ತಿಯು ಸೂಕ್ತವಾಗಿ ಆಯ್ಕೆಯಾಗಿದ್ದಾನೆಯೇ ಅಥವಾ ನೇಮಕಗೊಂಡಿದ್ದಾನೆಯೇ ಅಥವಾ ಅದಕ್ಕೆ ಅರ್ಹನಾಗಿದ್ದಾನೆಯೇ ಎಂಬ ಯಾವುದೇ ಪ್ರಶ್ನೆ ಉದ್ಭವಿಸಿದರೆ, ಆ ವಿಷಯವನ್ನು ತೀರ್ಮಾನಕ್ಕಾಗಿ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**44. ಸಮಿತಿಗಳ ರಚನೆ.–** 23ನೇ ಪ್ರಕರಣದಲ್ಲಿ ನಮೂದಿಸಿದ ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಅಧಿಕಾರವನ್ನು ಹೊಂದಿರುವ ಅಂಥ ಸದಸ್ಯರನ್ನು ಒಳಗೊಂಡ ಅಂಥ ಪ್ರಾಧಿಕಾರದ ಒಂದು ಸಮಿತಿಯನ್ನು ರಚಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**45. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಂಸ್ಥೆಯ ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ಪೈಕಿ ಯಾವುದೇ ಸ್ಥಾನವು ಆಕಸ್ಮಿಕವಾಗಿ ಖಾಲಿಯಾದರೆ, ಯಾರ ಸ್ಥಾನವು ಖಾಲಿಯಾಗಿ ತುಂಬಬೇಕಾಗಿ ಬಂದಿದೆಯೋ ಆ ಸದಸ್ಯನನ್ನು ಯಾವ ರೀತಿಯಲ್ಲಿ ಆರಿಸಲಾಗಿತ್ತೋ ಅದೇ ರೀತಿಯಲ್ಲಿ ಹೊಸ ಸದಸ್ಯನನ್ನು ಆರಿಸಿ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ಖಾಲಿ ಸ್ಥಾನವನ್ನು ಭರ್ತಿ ಮಾಡಿದ ವ್ಯಕ್ತಿಯು ಆತನು ಯಾವ ಸದಸ್ಯನ ಸ್ಥಾನದಲ್ಲಿ ಭರ್ತಿಯಾಗಿರುವನೋ ಆ ಸದಸ್ಯನು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯನಾಗಿ ಉಳಿಯುತ್ತಿದ್ದ ಬಾಕಿ ಅವಧಿಯವರೆಗೆ ಮಾತ್ರ ಸದಸ್ಯನಾಗಿರತಕ್ಕದ್ದು.

**46. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.–** ಈ ಅಧಿನಿಯಮ ಅಥವಾ ಪರಿನಿಯಮಗಳು ಅಥವಾ ನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ವಿಶ್ವವಿದ್ಯಾಲಯದ ಯಾವೊಬ್ಬ ಅಧಿಕಾರಿ ಅಥವಾ ಇತರ ನೌಕರರ ವಿರುದ್ಧ ಯಾವುದೇ ದಾವೆ ಅಥವಾ ಇತರ ಕಾನೂನು ವ್ಯವಹರಣೆಗಳನ್ನು ನಡೆಸಲು ಅವಕಾಶ ಇರತಕ್ಕದ್ದಲ್ಲ.

**4[illegible] ತಾತ್ಕಾಲಿಕ ಉಪಬಂಧಗಳು.–** ಈ ಅಧಿನಿಯಮ ಮತ್ತು ಪರಿನಿಯಮಗಳ ಯಾವುದೇ ಇತರ [illegible] ಏನೇ ಇದ್ದರೂ.–

(i) ಮೊದಲ ಕುಲಪತಿ ಮತ್ತು ಸಹಕುಲಪತಿ, ಯಾರಾದರೂ ಇದ್ದರೆ, ಅವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(ii) ಮೊದಲ ಕುಲಸಚಿವರನ್ನು ಮತ್ತು ಮೊದಲ ಹಣಕಾಸು ಅಧಿಕಾರಿಯವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು; ಮತ್ತು

(iii) ಮೊದಲ ವ್ಯವಸ್ಥಾಪನ ಮಂಡಳಿ, ಮೊದಲ ಹಣಕಾಸು ಸಮಿತಿ, ಮೊದಲ ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಹಾಗೂ ಮೊದಲ ಶೈಕ್ಷಣಿಕ ಪರಿಷತ್ತನ್ನು ಕುಲಾಧಿಪತಿಯವರು ರಚಿಸತಕ್ಕದ್ದು.

**48. ಶಾಶ್ವತ ಶಾಸನಬದ್ಧ ದತ್ತಿ ನಿಧಿ.**– (1) ವಿಶ್ವವಿದ್ಯಾಲಯವು, ಕನಿಷ್ಠ ಇಪ್ಪತ್ತೈದು ಕೋಟಿ ರೂಪಾಯಿಗಳನ್ನುಳ್ಳ ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು ಇದರ ಪೈಕಿ ಕನಿಷ್ಠ ಹದಿನೈದು ಕೋಟಿ ರೂಪಾಯಿಗಳು ನಗದು ರೂಪದಲ್ಲಿ ಮತ್ತು ಇನ್ನುಳಿದದ್ದು ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ಇರತಕ್ಕದ್ದು ಮತ್ತು ಇದನ್ನು ತಾನಾಗಿಯೆ ಹೆಚ್ಚಿಸಬಹುದಾಗಿದ್ದು ಆದರೆ ಕಡಿಮೆ ಮಾಡತಕ್ಕದ್ದಲ್ಲ:

ಪರಂತು, ಬೆಂಗಳೂರು ಅಥವಾ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊರಗಿರುವ ವಿಶ್ವವಿದ್ಯಾಲಯದ ಸಂದರ್ಭದಲ್ಲಿ ಕನಿಷ್ಠ ಹತ್ತು ಕೋಟಿ ರೂಪಾಯಿಗಳು ನಗದು ರೂಪದಲ್ಲಿರತಕ್ಕದ್ದು ಮತ್ತು ಉಳಿದ ಐದು ಕೋಟಿ ರೂಪಾಯಿಗಳು ಬ್ಯಾಂಕ್ ಗ್ಯಾರಂಟಿಯ ರೂಪದಲ್ಲಿರತಕ್ಕದ್ದು.

(2) ವಿಶ್ವವಿದ್ಯಾಲಯವು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಹಣವನ್ನು ಹೂಡಲು ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯವು ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಗೆ ವರ್ಗಾವಣೆ ಮಾಡಬಹುದು. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನೂ ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(4) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಿದ ವರಮಾನದ ಶೇಕಡಾ ಎಪ್ಪತ್ತೈದರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತೈದರಷ್ಟನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಯಲ್ಲಿ ಪುನ: ತೊಡಗಿಸತಕ್ಕದ್ದು.

**49. ವಿಶ್ವವಿದ್ಯಾಲಯದ ದತ್ತಿ ನಿಧಿ.**– (1) ವಿಶ್ವವಿದ್ಯಾಲಯವು, ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ನಿಧಿಗಳನ್ನು ಒಳಗೊಂಡ ವಿಶ್ವವಿದ್ಯಾಲಯದ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದು ಕಾಲಕಾಲಕ್ಕೆ ಸ್ವೀಕರಿಸಬಹುದಾದ ದೇಣಿಗೆಗಳು ಮತ್ತು ಇತರ ನಿಧಿಗಳನ್ನು ಒಳಗೊಂಡಿರತಕ್ಕದ್ದು.

(2) ವಿಶ್ವವಿದ್ಯಾಲಯವು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ವಿಶ್ವವಿದ್ಯಾಲಯದ ದತ್ತಿನಿಧಿಯನ್ನು ಹೂಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯ ದತ್ತಿ ನಿಧಿಯು, ವಿಶ್ವವಿದ್ಯಾಲಯವು ತನ್ನ ಸಾಮಾಜಿಕ ಧ್ಯೇಯೋದ್ದೇಶಗಳನ್ನು ನೆರವೇರಿಸುವ ಸಂದರ್ಭದಲ್ಲಿ ಮತ್ತು/ಅಥವಾ ಮುಂಗಾಣದ ಸನ್ನಿವೇಶದಲ್ಲಿ ಉದ್ಭವಿಸಬಹುದಾದ ಹಣಕಾಸು ಸವಾಲುಗಳಿಂದ ತನ್ನನ್ನು ರಕ್ಷಿಸಿಕೊಳ್ಳುವುದಕ್ಕಾಗಿ, ಸ್ವಇಚ್ಛೆಯಿಂದ ನಿರ್ವಹಿಸಿಕೊಂಡು ಬರಲು ಮತ್ತು ಜವಾಬ್ದಾರಿಯಿಂದ ಹಣ ಹೂಡಿಕೆ ಮಾಡಲು ಇಚ್ಛೆಯುಳ್ಳವರಾಗಿ ಸ್ವಯಂ ವಿಧಿಸಿಕೊಂಡ ನಿಧಿಯಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಗೆ ವರ್ಗಾಯಿಸಬಹುದು. ವಿಶ್ವವಿದ್ಯಾಲಯದ ಸಮಾಪಣೆಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನು ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(5) ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಬರುವ ವರಮಾನದ ಶೇಕಡಾ ಎಂಭತ್ತರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸದ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತರಷ್ಟನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಯಲ್ಲಿ ಪುನ: ತೊಡಗಿಸತಕ್ಕದ್ದು.

**50. ಸಾಮಾನ್ಯ ನಿಧಿ.**– (1) ವಿಶ್ವವಿದ್ಯಾಲಯವು, ಒಂದು ಸಾಮಾನ್ಯ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯವು ವಿಧಿಸಬಹುದಾದ ಎಲ್ಲಾ ಶುಲ್ಕಗಳು;

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವುದೇ ಇತರ ಮೂಲದಿಂದ ಸ್ವೀಕರಿಸಲಾದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ದೇಣಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು ಅಥವಾ ವಂತಿಗೆಗಳು;

(2) ಸಾಮಾನ್ಯ ನಿಧಿಗೆ ಜಮಾ ಮಾಡುವ ನಿಧಿಗಳನ್ನು ವಿಶ್ವವಿದ್ಯಾಲಯದ ಎಲ್ಲಾ ಆವರ್ತಕ ವೆಚ್ಚಗಳನ್ನು ಭರಿಸಲು ಉಪಯೋಗಿಸಕೊಳ್ಳತಕ್ಕದ್ದು.

**51. ಅಭಿವೃದ್ಧಿ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಅಭಿವೃದ್ಧಿ ನಿಧಿಯನ್ನು ಸಹ ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ವಿದ್ಯಾರ್ಥಿಗಳಿಂದ ವಿಧಿಸಬಹುದಾದ ಅಭಿವೃದ್ಧಿ ಶುಲ್ಕಗಳು;

(ii) ವಿಶ್ವವಿದ್ಯಾಲಯದ ಅಭಿವೃದ್ಧಿಯ ಉದ್ದೇಶಗಳಿಗಾಗಿ ಯಾವುದೇ ಇತರ ಮೂಲಗಳಿಂದ ಸ್ವೀಕರಿಸಿದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ವಂತಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು ಅಥವಾ ವಂತಿಗೆಗಳು; ಮತ್ತು

(v) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಲಾದ ಎಲ್ಲಾ ವರಮಾನಗಳು.

(2) ಅಭಿವೃದ್ಧಿ ನಿಧಿಗೆ ಕಾಲಕಾಲಕ್ಕೆ ಜಮಾ ಮಾಡಿದ ನಿಧಿಯನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಉಪಯೋಗಿಸಕೊಳ್ಳತಕ್ಕದ್ದು.

**52. ನಿಧಿಗಳ ನಿರ್ವಹಣೆ.–** 48, 49, 50 ಮತ್ತು 51ನೇ ಪ್ರಕರಣಗಳಡಿಯಲ್ಲಿ ಸ್ಥಾಪಿಸಲಾದ ನಿಧಿಗಳನ್ನು ಪ್ರಬಂಧಕ ಮಂಡಳಿಯ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ನಿಯಂತ್ರಿಸತಕ್ಕದ್ದು ಹಾಗೂ ನಿರ್ವಹಿಸತಕ್ಕದ್ದು.

**53. ವಾರ್ಷಿಕ ವರದಿ.–** (1) ವಿಶ್ವವಿದ್ಯಾಲಯದ ವಾರ್ಷಿಕ ವರದಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ಅದರ ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಪ್ರಬಂಧಕ ಮಂಡಳಿಯು ವಾರ್ಷಿಕ ವರದಿಯನ್ನು ತನ್ನ ಸಭೆಯಲ್ಲಿ ಪರಿಗಣಿಸತಕ್ಕದ್ದು ಹಾಗೂ ಅದನ್ನು ಮಾರ್ಪಾಡುಗಳೊಡನೆ ಅಥವಾ ಮಾರ್ಪಾಡುಗಳಿಲ್ಲದೆ ಅನುಮೋದಿಸಬಹುದು.

(3) ಪ್ರಬಂಧಕ ಮಂಡಳಿಯು ಸೂಕ್ತವಾಗಿ ಅನುಮೋದಿಸಿದ ವಾರ್ಷಿಕ ವರದಿಯ ಒಂದು ಪ್ರತಿಯನ್ನು ಪ್ರತಿವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ಡಿಸೆಂಬರ್ 31ಕ್ಕೆ ಮೊದಲು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**54. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.–** (1) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕ ಪತ್ರ ಮತ್ತು ಜಮಾ ಖರ್ಚು ಪಟ್ಟಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯಕ್ಕೆ ಎಲ್ಲಾ ಮೂಲಗಳಿಂದ ಪ್ರಾಪ್ತವಾಗುವ ಅಥವಾ ಸ್ವೀಕರಿಸಲಾಗುವ ಎಲ್ಲಾ ನಿಧಿಗಳು ಹಾಗೂ ವಿತರಿಸಿದ ಅಥವಾ ಸಂದಾಯ ಮಾಡಿದ ಎಲ್ಲಾ ಮೊಬಲಗುಗಳನ್ನು ವಿಶ್ವವಿದ್ಯಾಲಯವು ನಿರ್ವಹಿಸುವ ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕಪತ್ರಗಳನ್ನು ಪ್ರತಿ ವರ್ಷವೂ ಭಾರತದ ಚಾರ್ಟೆಡ್ ಅಕೌಂಟೆಂಟ್‌ಗಳ ಸಂಸ್ಥೆಯ ಸದಸ್ಯರಾಗಿರುವ ಒಬ್ಬ ಲೆಕ್ಕಪರಿಶೋಧಕರಿಂದ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಲೆಕ್ಕಪರಿಶೋಧನಾ ವರದಿಯೊಡನೆ, ಪ್ರತಿ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ನವೆಂಬರ್ 30ಕ್ಕೆ ಮೊದಲು ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(4) ವಾರ್ಷಿಕ ಲೆಕ್ಕಪತ್ರಗಳು, ಜಮಾಖರ್ಚು ಪಟ್ಟಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಪ್ರಬಂಧಕ ಮಂಡಳಿಯು ತನ್ನ ಸಭೆಯಲ್ಲಿ ಪರ್ಯಾಲೋಚಿಸತಕ್ಕದ್ದು ಮತ್ತು ಪ್ರಬಂಧಕ ಮಂಡಳಿಯು ಅದನ್ನು ತನ್ನ ಅಭಿಪ್ರಾಯಗಳೊಡನೆ ಸಂದರ್ಶಕರಿಗೆ ಹಾಗೂ ಸರ್ಕಾರಕ್ಕೆ ಪ್ರತಿ ವರ್ಷದ ಡಿಸೆಂಬರ್ 31ಕ್ಕೆ ಮೊದಲು ಕಳುಹಿಸತಕ್ಕದ್ದು.

(5) ಲೆಕ್ಕಪರಿಶೋಧಕರ ವರದಿಯಲ್ಲಿ ಯಾವುದೇ ಮುಖ್ಯ ಬದಲಾವಣೆ ಇದ್ದ ಸಂದರ್ಭದಲ್ಲಿ, ಅವುಗಳನ್ನು ಸರಿಪಡಿಸಲು, ರಾಜ್ಯ ಸರ್ಕಾರವು ವಿಶ್ವವಿದ್ಯಾಲಯಕ್ಕೆ ನಿರ್ದೇಶನಗಳನ್ನು ಹೊರಡಿಬಹುದು ಮತ್ತು ಅಂಥ ನಿರ್ದೇಶನಗಳು ವಿಶ್ವವಿದ್ಯಾಲಯದ ಮೇಲೆ ಬಂಧನಕಾರಿಯಾಗಿರತಕ್ಕದ್ದು.

**55. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಮಿತಿಯ ಯಾವುದೇ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ ಅಥವಾ ಗೊತ್ತುವಳಿಯು ಅಥವಾ ವಿಶ್ವವಿದ್ಯಾಲಯದ ಸ್ವಾಧೀನದಲ್ಲಿರುವ ಇತರ ದಾಖಲೆಗಳು ಅಥವಾ ವಿಶ್ವವಿದ್ಯಾಲಯವು ಯುಕ್ತವಾಗಿ ನಿರ್ವಹಿಸುವ ಯಾವುದೇ ರಿಜಿಸ್ಟರ್‌ನಲ್ಲಿಯ ಯಾವುದೇ ನಮೂದುಗಳ ಪ್ರತಿಯನ್ನು, ಅದರ ಮೇಲೆ ಕುಲಸಚಿವರು ಪ್ರಮಾಣೀಕರಿಸಿದ್ದರೆ, ಅದನ್ನು ಅಂಥ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ, ಗೊತ್ತುವಳಿ ಅಥವಾ ದಾಖಲೆ ಅಥವಾ ರಿಜಿಸ್ಟರ್‌ನಲ್ಲಿ ಇರುವ ನಮೂದನ್ನು ಮೇಲ್ನೋಟದ ಸಾಕ್ಷ್ಯವೆಂಬುದಾಗಿ ಸ್ವೀಕರಿಸತಕ್ಕದ್ದು ಮತ್ತು ವಿಷಯಗಳ ಸಾಕ್ಷಿಯಾಗಿ ಅಂಗೀಕರಿಸತಕ್ಕದ್ದು ಹಾಗೂ ಮೂಲ ದಾಖಲೆಗಳನ್ನೇ ಸಲ್ಲಿಸಿದ್ದರೆ ಅದನ್ನು ದಾಖಲಿಸಿರುವ ವಿಷಯಗಳು ಮತ್ತು ವಹಿವಾಟುಗಳ ಸಾಕ್ಷ್ಯವಾಗಿ ಅಂಗೀಕರಿಸಲಾಗುತ್ತಿತ್ತೋ, ಅದೇ ರೀತಿಯಲ್ಲಿ ಇವನ್ನೂ ಸಾಕ್ಷ್ಯವಾಗಿ ಅಂಗೀಕರಿಸತಕ್ಕದ್ದು.

**56. ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ.–** ರಾಜ್ಯಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಥವಾ ಅದರಲ್ಲಿ ಇರುವ ಯಾವುವೇ ಉಪಬಂಧಗಳನ್ನು ಅಥವಾ ಅದರಡಿಯಲ್ಲಿ ರಚಿಸಿದ ಯಾವುವೇ ನಿಯಮಗಳು ಅಥವಾ ಆದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿರ್ದೇಶನ ನೀಡುವುದು ಅವಶ್ಯವೆಂದು ಅಥವಾ ಉಚಿತವೆಂದು ಅಭಿಪ್ರಾಯಪಟ್ಟಲ್ಲಿ ಅದು ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ ಅಥವಾ ಸಂದರ್ಭಾನುಸಾರವಾಗಿ ವ್ಯವಸ್ಥಾಪನಾ ಮಂಡಳಿಯು ಅಂಥ ಪ್ರತಿಯೊಂದು ನಿರ್ದೇಶನವನ್ನು ಪಾಲಿಸತಕ್ಕದ್ದು.

**57. ದಂಡಗಳು.–** (1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿತವಾದ ನಿಯಮಗಳು ಉಪಬಂಧಗಳನ್ನು ಅಥವಾ ಯಾವುದೇ ಪರೀಕ್ಷಾ ವಿಷಯಗಳನ್ನು ಅಥವಾ ಪದವಿಗಳನ್ನು ನೀಡುವುದಕ್ಕೆ ಅಥವಾ ಅಂಕಪಟ್ಟಿಗಳನ್ನು ನೀಡುವುದಕ್ಕೆ ಸಂಬಂಧಪಟ್ಟ ವಿಷಯಗಳಲ್ಲಿ ಉಲ್ಲಂಘನೆಗಳನ್ನು ಮಾಡುವ ಯಾವೊಬ್ಬ ವ್ಯಕ್ತಿಯು, ಅಪರಾಧ ನಿರ್ಣಯವಾದ ಮೇಲೆ, ಐವತ್ತು ಸಾವಿರ ರೂಪಾಯಿಗಳಿಗೆ ಕಡಿಮೆಯಲ್ಲದ ಆದರೆ ಹತ್ತು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಆರು ತಿಂಗಳ ಅವಧಿಗಿಂತ ಕಡಿಮೆಯಲ್ಲದ ಆದರೆ ಎರಡು ವರ್ಷಗಳ ಅವಧಿಯವರೆಗೆ ವಿಸ್ತರಿಸಬಹುದಾದ ಕಾರಾವಾಸದಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು:

ಪರಂತು, ಅಪರಾಧವನ್ನು ಎಸಗುವಲ್ಲಿ ವಿಶ್ವವಿದ್ಯಾಲಯವೂ ಸಹ ಒಳಗೊಂಡಿರುವಲ್ಲಿ, ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಈ ಅಧಿನಿಯಮದ ಅಡಿಯಲ್ಲಿ ಮಂಜೂರು ಮಾಡಲಾದ ಅನುಮತಿ ಪತ್ರವನ್ನು ಹಿಂತೆಗೆದುಕೊಳ್ಳತಕ್ಕದ್ದು.

(2) ಈ ಪ್ರಕರಣದ ಅಡಿಯಲ್ಲಿಯ ದಂಡವನ್ನು ಇತರ ಯಾವುದೇ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಲಾದ ದಂಡಕ್ಕೆ ಬಾಧಕವಾಗದಂತೆ ವಿಧಿಸಬಹುದು.

**58. ಪ್ರವೇಶಿಸುವ ಮತ್ತು ಪರಿಶೋಧಿಸುವ ಅಧಿಕಾರ.–** ಈ ಉದ್ದೇಶಕ್ಕಾಗಿ, ರಾಜ್ಯಸರ್ಕಾರದಿಂದ ಪ್ರಾಧಿಕೃತಗೊಂಡ 'ಎ' ಸಮೂಹದ ಅಧಿಕಾರಿ ದರ್ಜೆಗಿಂತ ಕಡಿಮೆಇಲ್ಲದ ದರ್ಜೆಯ ಯಾವೊಬ್ಬ ಅಧಿಕಾರಿಯು, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಶನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ 37) ಅಡಿಯಲ್ಲಿ ನಿರ್ದಿಷ್ಟಪಡಿಸಿರಬಹುದಾದ ಅಂಥ ಷರತ್ತುಗಳಿಗೆ ಒಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ. ಆ ಅಧಿನಿಯಮದ 9ನೇ ಪ್ರಕರಣದ ಅಡಿಯಲ್ಲಿ ಉಪಬಂಧಿಸಲಾದಂತಹವೇ ಅಧಿಕಾರಗಳನ್ನು ಚಲಾಯಿಸಲು ಮತ್ತು ಪ್ರಕಾರ್ಯಗಳನ್ನು ನೆರವೇರಿಸಲು ಅಧಿಕೃತನಾದ ಅಧಿಕಾರಿ ಎಂಬುದಾಗಿ ಭಾವಿಸತಕ್ಕದ್ದು.

**59. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ನಿರ್ದೇಶನವನ್ನು ನೀಡುವ ಅಧಿಕಾರ.–** (1) ವಿಶ್ವವಿದ್ಯಾಲಯವು ತನ್ನ ರಚನೆ ಅಥವಾ ನಿಗಮನವನ್ನು ನಿಯಂತ್ರಿಸುವ ಕಾನೂನಿಗೆ ಅನುಸಾರವಾಗಿ ತನ್ನ ಸಮಾಪನವನ್ನು ಉದ್ದೇಶಿಸಿದ್ದಲ್ಲಿ, ಅದು ಕನಿಷ್ಠ ಆರು ತಿಂಗಳ ಲಿಖಿತ ಪೂರ್ವ ಸೂಚನೆಯನ್ನು (ನೋಟಿಸು) ಸರ್ಕಾರಕ್ಕೆ ನೀಡತಕ್ಕದ್ದು.

(2) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಈ ಕೆಳಗಿನವುಗಳ ಬಗ್ಗೆ, ಎಂದರೆ:–

(i) ಪದವಿಯನ್ನು ನೀಡುವುದಕ್ಕಾಗಿ ಬೋಧನೆಯ ಗುಣಮಟ್ಟ;

(ii) ಶಿಕ್ಷಣದ ಗುಣಮಟ್ಟ;

(iii) ಉನ್ನತ ಶಿಕ್ಷಣದ ವ್ಯಾಪಾರೀಕರಣವನ್ನು ತಡೆಗಟ್ಟುವುದು;

(iv) ಅಧಿನಿಯಮದ ಉಪಬಂಧಗಳ ಉಲ್ಲಂಘನೆಯ ಬಗ್ಗೆ, ಯಾವುದಾದರೂ ಇದ್ದಲ್ಲಿ.

– ಇವುಗಳ ಬಗ್ಗೆ ಕನಿಷ್ಠ ಎರಡು ವರ್ಷಗಳಿಗೊಮ್ಮೆ ಪರಿವೀಕ್ಷಣೆಯನ್ನು ನಡೆಸತಕ್ಕದ್ದು ಮತ್ತು ಸರ್ಕಾರಕ್ಕೆ ವರದಿಯನ್ನು ಕಳುಹಿಸತಕ್ಕದ್ದು.

(3) ದುರ್ವ್ಯವಹರಣೆ, ದುರಾಡಳಿತ ಮತ್ತು ಅಶಿಸ್ತು ಆಗಿದೆ ಎಂಬುದನ್ನು ಗುರುತಿಸಿದರೆ, ಸರ್ಕಾರವು, ವಿಶ್ವವಿದ್ಯಾಲಯದ ಆಡಳಿತವರ್ಗದವರಿಗೆ ಆಡಳಿತವನ್ನು ಸರಿಪಡಿಸಬೇಕೆಂದು ನಿರ್ದೇಶನಗಳನ್ನು ನೀಡತಕ್ಕದ್ದು. ನಿಯಮಿಸಬಹುದಾದ ಅಂಥ ಅವಧಿಯೊಳಗೆ ಆ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುವ ಹಕ್ಕು ಸರ್ಕಾರದಲ್ಲಿ ನಿಹಿತವಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ವಿಧಾನವು, ಸರ್ಕಾರವು ಈ ಸಂಬಂಧದಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು:

ಪರಂತು, ವಿಶ್ವವಿದ್ಯಾಲಯವು ತನ್ನ ಕಾರಣಗಳನ್ನು ಹೇಳಿಕೊಳ್ಳಲು ಸಮಂಜಸ ಅವಕಾಶಗಳನ್ನು ನೀಡಿದ ಹೊರತು ಅಂಥ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

(5) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೋಟಿಸನ್ನು ಸ್ವೀಕರಿಸಿದ ಮೇಲೆ, ಸರ್ಕಾರವು ಸಂಬಂಧಿಸಿದ ನಿಯಂತ್ರಣಾ ಪ್ರಾಧಿಕಾರದೊಡನೆ ಸಮಾಲೋಚಿಸಿ, ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ಅಥವಾ ವ್ಯಾಸಂಗ ಕ್ರಮವನ್ನು ಪರಿಸಮಾಪನಗೊಳಿಸಲು ಉದ್ದೇಶಿಸಿದ ದಿನಾಂಕದಿಂದ, ವಿಶ್ವವಿದ್ಯಾಲಯದಲ್ಲಿ ನಿಯತ ವ್ಯಾಸಂಗ ಕ್ರಮಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕೊನೆಯ ತಂಡ (ಬ್ಯಾಚ್) ತನ್ನ ವ್ಯಾಸಂಗ ಕ್ರಮವನ್ನು ಮುಗಿಸುವವರೆಗೆ ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು.

**60. ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು.–** (1) 58ನೇ ಪ್ರಕರಣದ (5)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ಅದರ ಆಡಳಿತಾತ್ಮಕ ವೆಚ್ಚಗಳನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಭರಿಸತಕ್ಕದ್ದು.

(2) ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ವಿಶ್ವವಿದ್ಯಾಲಯದ ವೆಚ್ಚವನ್ನು ಭರಿಸಲು 48, 49, 50 ಮತ್ತು 51ನೇ ಪ್ರಕರಣಗಳ ಅಡಿಯಲ್ಲಿ ಉಲ್ಲೇಖಿಸಲಾದ ನಿಧಿಯು ಸಾಕಷ್ಟು ಇಲ್ಲದಿದ್ದಲ್ಲಿ, ಅಂಥ ವೆಚ್ಚವನ್ನು ಸರ್ಕಾರವು, ವಿಶ್ವವಿದ್ಯಾಲಯದ ಸ್ವತ್ತುಗಳು ಮತ್ತು ಆಸ್ತಿಗಳನ್ನು ವಿಲೇ ಮಾಡುವ ಮೂಲಕ ಭರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಸಮಾಪನೆಯು ದುರ್ವ್ಯವಹರಣೆ ಅಥವಾ ದುರಾಡಳಿತದ ಕಾರಣಗಳಿಗಾಗಿ ಆಗಿದ್ದರೆ, ಸರ್ಕಾರವು ಅಂಥ ದುರ್ವ್ಯವಹಾರಕ್ಕೆ ಅಥವಾ ದುರಾಡಳಿತಕ್ಕೆ ಹೊಣೆಯಾಗಿರುವ ವ್ಯಕ್ತಿಗಳನ್ನು ಗುರುತಿಸುವ ಮತ್ತು ಅವರ ಮೇಲೆ ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ದಂಡನೆಯನ್ನು ವಿಧಿಸಲು ಸ್ವತಂತ್ರವಾಗಿರತಕ್ಕದ್ದು.

**61. ತೊಂದರೆಗಳ ನಿವಾರಣೆಗೆ ಅಧಿಕಾರ.–** (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಅಥವಾ ಆದೇಶದ ಮೂಲಕ ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಐದು ವರ್ಷಗಳು ಮುಕ್ತಾಯವಾದ ತರುವಾಯ ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಅಧಿಸೂಚನೆ ಅಥವಾ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

**62. ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ.**– (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ. ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಉಭಯ ಸದನಗಳು ಒಪ್ಪಿದರೆ ತದನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ದತಿಯು ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವನ್ನು ಉಂಟುಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಕೆ.ದ್ವಾರಕನಾಥ್ ಬಾಬು**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) ಪ್ರತಿಗಳು: 400

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು
ವಿಶೇಷ ರಾಜ್ಯ ಪತ್ರಿಕೆ

| ಭಾಗ - IV-A<br>Part - IV-A | ಬೆಂಗಳೂರು, ಸೋಮವಾರ, ಮಾರ್ಚ್ ೨೫, ೨೦೧೩ (ಚೈತ್ರ ೪, ಶಕ ವರ್ಷ ೧೯೩೪)<br>Bangalore, Monday, March 25, 2013 (Chaithra 4, Shaka Varsha 1934) | ನಂ. ೬೩೭<br>No. 637 |
|---|---|---|


ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಂವ್ಯಶಾಇ 11 ಶಾಸನ 2013, ಬೆಂಗಳೂರು, ದಿನಾಂಕ: 25.03.2013

ಪ್ರೆಸಿಡೆನ್ಸಿ ವಿಶ್ವವಿದ್ಯಾಲಯ ವಿಧೇಯಕ 2013 – ಇದಕ್ಕೆ 2013ರ ಮಾರ್ಚ್ ತಿಂಗಳ ಇಪ್ಪತ್ತೆರಡನೇ ದಿನಾಂಕದಂದು ಘನತೆವೆತ್ತ ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2013ರ ಕರ್ನಾಟಕ ಅಧಿನಿಯಮ ಸಂಖ್ಯೆ:41 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2013 ರ ಕರ್ನಾಟಕ ಅಧಿನಿಯಮ ಸಂಖ್ಯೆ: 41**

(2013ರ ಮಾರ್ಚ್ ಮಾಹೆಯ ಇಪ್ಪತ್ತೈದನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಪ್ರೆಸಿಡೆನ್ಸಿ ವಿಶ್ವವಿದ್ಯಾಲಯ ಅಧಿನಿಯಮ, 2013**

(2013ರ ಮಾರ್ಚ್ ಮಾಹೆಯ ಇಪ್ಪತ್ತೆರಡನೇ ದಿನಾಂಕದಂದು ರಾಜ್ಯಪಾಲರ ಅನುಮತಿಯನ್ನು ಪಡೆಯಲಾಗಿದೆ)

ಬಿಸಿನೆಸ್ ಅಂಡ್ ಮ್ಯಾನೇಜ್‌ಮೆಂಟ್ ಸ್ಟಡೀಸ್, ಜೀವ ವಿಜ್ಞಾನಗಳು, ಕಂಪ್ಯೂಟರ್ ಸೈನ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಹಾಗೂ ಇತರ ತಾಂತ್ರಿಕ ಕೋರ್ಸುಗಳು, ವೈದ್ಯಕೀಯ ವಿಜ್ಞಾನಗಳು ಮತ್ತು ತತ್ಸಂಬಂಧಿ ವಲಯಗಳಲ್ಲಿ ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಉತ್ತೇಜಿಸಲು ಮತ್ತು ಕೈಗೊಳ್ಳಲು ಎ.ಎಚ್. ಮೆಮೋರಿಯಲ್ ಎಜುಕೇಷನ್ ಟ್ರಸ್ಟ್, ಬೆಂಗಳೂರು ಇವರು ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದಕ್ಕಾಗಿ ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಬಿಸಿನೆಸ್ ಅಂಡ್ ಮ್ಯಾನೇಜ್‌ಮೆಂಟ್ ಸ್ಟಡೀಸ್, ಜೀವ ವಿಜ್ಞಾನಗಳು, ಕಂಪ್ಯೂಟರ್ ಸೈನ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಹಾಗೂ ಇತರ ತಾಂತ್ರಿಕ ಕೋರ್ಸುಗಳು, ವೈದ್ಯಕೀಯ ವಿಜ್ಞಾನಗಳು ಮತ್ತು ತತ್ಸಂಬಂಧಿ ವಲಯಗಳಲ್ಲಿ ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಉತ್ತೇಜಿಸಲು ಮತ್ತು ಕೈಗೊಳ್ಳಲು ಎ.ಎಚ್. ಮೆಮೋರಿಯಲ್ ಎಜುಕೇಷನ್ ಟ್ರಸ್ಟ್, ಬೆಂಗಳೂರು ಇವರು ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ನಾಲ್ಕನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

## ಅಧ್ಯಾಯ – I

### ಪ್ರಾರಂಭಿಕ

1\. **ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಪ್ರೆಸಿಡೆನ್ಸಿ ವಿಶ್ವವಿದ್ಯಾಲಯ ಅಧಿನಿಯಮ, 2013 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. ಪರಿಭಾಷೆಗಳು.**- ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) "ಶೈಕ್ಷಣಿಕ ಪರಿಷತ್ತು (ಅಕೆಡೆಮಿಕ್ ಕೌನ್ಸಿಲ್)" ಎಂದರೆ, 25ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿಸಲಾದ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು;

(ಬಿ) "ಕಾರ್ಯಸೂಚಿ ವಿಷಯಗಳು", ಎಂದರೆ, ಪರಿನಿಯಮಗಳಲ್ಲಿ ಹೆಸರಿಸಬಹುದಾದ ಮತ್ತು ಒಂದು ಸಭೆಯಲ್ಲಿ ಆ ವಿಷಯಗಳನ್ನು ಮತ್ತು ಕಲಾಪಗಳನ್ನು ಅನುಮೋದಿಸಬಹುದೆಂದು ತಮ್ಮ ಸಮ್ಮತಿ ಸೂಚಿಸಿ ಕುಲಾಧಿಪತಿಯವರು ಮುಂಚಿತವಾಗಿಯೇ ಲಿಖಿತ ಅನುಮೋದನೆಯನ್ನು ಕೊಟ್ಟಿದ್ದಾಗ ಮಾತ್ರವೇ ಸಂದರ್ಭಾನುಸಾರ ಪ್ರಬಂಧಕರ ಮಂಡಳಿ ಅಥವಾ ವ್ಯವಸ್ಥಾಪನಾ ಮಂಡಳಿ ಅಥವಾ ಯಾವುದೇ ಸಮಿತಿಯವರು ಕಾರ್ಯಸೂಚಿಯಲ್ಲಿ ಸೇರಿಸಬಹುದಾದ ಅಥವಾ ಸಭೆಯಲ್ಲಿ ಚರ್ಚೆಗೆ ತೆಗೆದುಕೊಂಡು ನಿರ್ಣಯವನ್ನು ಕೊಡಬಹುದಾದ ಎಲ್ಲಾ ವಿಷಯಗಳು ಮತ್ತು ಕಲಾಪಗಳು;

(ಸಿ) "ಪ್ರಬಂಧಕರ ಮಂಡಳಿ" ಎಂದರೆ, 23ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಪ್ರಬಂಧಕರ ಮಂಡಳಿ;

(ಡಿ) "ವ್ಯವಸ್ಥಾಪನಾ ಮಂಡಳಿ" ಎಂದರೆ 24ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದಂತೆ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿ ;

(ಇ) "ಕುಲಾಧಿಪತಿ", "ಕುಲಪತಿ", "ಸಹಕುಲಪತಿ" ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ ಮತ್ತು ಸಹಕುಲಪತಿ;

(ಎಫ್) "ಕ್ಯಾಂಪಸ್" ಎಂದರೆ, ಅದು ಎಲ್ಲಾದರೂ ಇರಲಿ ವಿಶ್ವವಿದ್ಯಾಲಯವು ಸ್ಥಾಪಿಸಿದ, ನಿರ್ವಹಿಸುವ ಒಂದು ಕ್ಯಾಂಪಸ್;

(ಜಿ) "ಸಮಿತಿಗಳು" ಎಂದರೆ, ಈ ಅಧಿನಿಯಮದಡಿಯಲ್ಲಿ ರೂಪಿಸಲಾದ ಸಮಿತಿಗಳು ಅಥವಾ ಸಂದರ್ಭಾನುಸಾರವಾಗಿ ವಿಶ್ವವಿದ್ಯಾಲಯದ ವಿವಿಧ ಕಾರ್ಯಕರ್ತರು ರಚಿಸಿರುವ ಸಮಿತಿಗಳು ಮತ್ತು ಅದರಲ್ಲಿ ಶೋಧನಾ ಸಮಿತಿ, ನಾಮನಿರ್ದೇಶನ ಸಮಿತಿ, ಹಣಕಾಸು ಸಮಿತಿ, ಹಣಕಾಸು ಪರಿಷತ್ತು ಮತ್ತು ಅಂಥ ಇತರ ಸಮಿತಿಗಳು ಒಳಗೊಳ್ಳುತ್ತವೆ;

(ಎಚ್) "ಘಟಕ ಕಾಲೇಜು" ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುತ್ತಿರುವ ಒಂದು ಕಾಲೇಜು ಅಥವಾ ಸಂಸ್ಥೆ;

(ಐ) "ಹಣಕಾಸು ಸಮಿತಿ" ಎಂದರೆ, 27ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಹಣಕಾಸು ಸಮಿತಿ;

(ಜೆ) "ಸರ್ಕಾರ" ಎಂದರೆ, ಕರ್ನಾಟಕ ಸರ್ಕಾರ;

(ಕೆ) "ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳು" ಎಂದರೆ, ವಿಶ್ವವಿದ್ಯಾಲಯ ಅನುದಾನ ಆಯೋಗ, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು, ಭಾರತೀಯ ವೈದ್ಯಕೀಯ ಪರಿಷತ್ತು, ಭಾರತೀಯ ಔಷಧ ವಿಜ್ಞಾನ ಪರಿಷತ್ತು, ಭಾರತೀಯ ಕೃಷಿ ಸಂಶೋಧನಾ ಪರಿಷತ್ತು, ರಾಷ್ಟ್ರೀಯ ಮೌಲ್ಯಮಾಪನ ಮತ್ತು ಅಧಿಮಾನ್ಯತಾ ಪರಿಷತ್ತು, ರಾಷ್ಟ್ರೀಯ ಬೋಧಕ ಶಿಕ್ಷಣ ಪರಿಷತ್ತು, ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಪರಿಷತ್ತು ಮುಂತಾದ, ಉನ್ನತ ಶಿಕ್ಷಣದಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುವಂತೆ ನೋಡಿಕೊಳ್ಳುವುದಕ್ಕಾಗಿ ಗುಣಮಟ್ಟಗಳು ಮತ್ತು ಷರತ್ತುಗಳನ್ನು ವಿಧಿಸುವುದಕ್ಕಾಗಿ, ಕೇಂದ್ರ ಸರ್ಕಾರವು ಸ್ಥಾಪಿಸಿರುವ ಒಂದು ಸಂಸ್ಥೆ ಮತ್ತು ಇದರಲ್ಲಿ ಸರ್ಕಾರವೂ ಸೇರಿರುತ್ತದೆ;

(ಎಲ್) "ನಿಯಮಿಸಲಾದುದು" ಎಂದರೆ, ಈ ಅಧಿನಿಯಮದಡಿಯಲ್ಲಿ ಸರ್ಕಾರವು ರಚಿಸಲಾದ ನಿಯಮಗಳ ಮೂಲಕ ನಿಯಮಿಸಲಾದುದು;

(ಎಂ) "ಒಂದು ಘಟಕ ಕಾಲೇಜಿಗೆ ಸಂಬಂಧಪಟ್ಟಂತೆ ಪ್ರಾಂಶುಪಾಲರು" ಎಂದರೆ, ಘಟಕ ಕಾಲೇಜಿನ ಮುಖ್ಯಸ್ಥರು ಮತ್ತು ಪ್ರಾಂಶುಪಾಲರು ಇಲ್ಲದಿದ್ದಲ್ಲಿ ಅಥವಾ ನೇಮಕವಾದ ಪ್ರಾಂಶುಪಾಲರ ಗೈರುಹಾಜರಿಯಲ್ಲಿ, ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ತಾತ್ಕಾಲಿಕವಾಗಿ ನೇಮಕಗೊಂಡಿರುವ ಉಪಪ್ರಾಂಶುಪಾಲರು ಅಥವಾ ಯಾವುದೇ ಇತರ ವ್ಯಕ್ತಿಯೂ ಇದರಲ್ಲಿ ಒಳಗೊಳ್ಳುತ್ತಾರೆ;

(ಎನ್) "ಕುಲಸಚಿವರು" ಎಂದರೆ, ವಿಶ್ವವಿದ್ಯಾಲಯದ ಕುಲಸಚಿವರು;

(ಒ) "ಪ್ರಾದೇಶಿಕ ಕೇಂದ್ರ" ಎಂದರೆ, ಯಾವುದೇ ಪ್ರದೇಶದಲ್ಲಿನ ಅಧ್ಯಯನ ಕೇಂದ್ರಗಳ ಕಾರ್ಯವನ್ನು ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ಮಾಡುವ ಉದ್ದೇಶಕ್ಕಾಗಿ ಮತ್ತು ಅಂಥ ಕೇಂದ್ರಕ್ಕೆ ಕಾರ್ಯಕಾರಿ ಪರಿಷತ್ತು ವಹಿಸಿಕೊಡಬಹುದಾದ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸುವುದಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಅಥವಾ ನಿರ್ವಹಿಸಿಕೊಂಡುಬರುವ ಒಂದು ಕೇಂದ್ರ;

(ಪಿ) ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ "ಪ್ರಾಯೋಜಕ ಪ್ರಾಧಿಕಾರ" ಅಥವಾ "ಪ್ರಾಯೋಜಕ ಸಂಸ್ಥೆ" ಎಂದರೆ, ನ್ಯಾಸ;

(ಕ್ಯೂ) "ರಾಜ್ಯ" ಎಂದರೆ, ಕರ್ನಾಟಕ ರಾಜ್ಯ;

(ಆರ್) "ಪರಿನಿಯಮಗಳು" ಮತ್ತು "ವಿನಿಯಮಗಳು" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಅನುಕ್ರಮವಾಗಿ ವಿಶ್ವವಿದ್ಯಾಲಯದ ಪರಿನಿಯಮಗಳು ಮತ್ತು ವಿನಿಯಮಗಳು;

(ಎಸ್) "ಅಧ್ಯಯನ ಕೇಂದ್ರ" ಎಂದರೆ, ವಿದ್ಯಾರ್ಥಿಗಳಿಗೆ ಅಗತ್ಯವಾದ ಬುದ್ಧಿವಾದ, ಸಲಹೆಗಳನ್ನು ನೀಡುವ ಅಥವಾ ಇತರ ಯಾವುದೇ ನೆರವನ್ನು ನೀಡುವ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಮತ್ತು ನಿರ್ವಹಿಸಿಕೊಂಡುಬಂದ ಒಂದು ಕೇಂದ್ರ;

(ಟಿ) "ಅಧ್ಯಾಪಕರು" ಎಂದರೆ, ಒಬ್ಬ ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಒಂದು ಘಟಕ ಕಾಲೇಜಿನಲ್ಲಿ ಬೋಧಿಸುವುದಕ್ಕೆ ಅಥವಾ ಸಂಶೋಧನೆ ನಡೆಸುವುದಕ್ಕೆ ಅಥವಾ ಸಂಶೋಧನೆಗೆ ಮಾರ್ಗದರ್ಶನ ನೀಡುವುದಕ್ಕೆ ನೇಮಕವಾದ ಅಂಥ ಇತರ ವ್ಯಕ್ತಿ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗವು ನಿಯಮಿಸಿದ ಗುಣಮಟ್ಟಗಳಿಗೆ ಅನುಸಾರವಾಗಿ ಇರುವ ಘಟಕ ಕಾಲೇಜಿನ ಪ್ರಾಂಶುಪಾಲರು ಇದರಲ್ಲಿ ಒಳಗೊಳ್ಳುತ್ತಾರೆ;

(ಯು) "ನ್ಯಾಸ" ಎಂದರೆ ಭಾರತೀಯ ನ್ಯಾಸ ಅಧಿನಿಯಮ, 1882ರ ಅಡಿಯಲ್ಲಿ ನೋಂದಣಿಯಾದ ಎ ಹೆಚ್ ಮೆಮೊರಿಯಲ್ ಎಜುಕೇಷಲ್ ಟ್ರಸ್ಟ್ ;

(ವಿ) "ವಿಶ್ವವಿದ್ಯಾಲಯ ಅನುದಾನಗಳ ಆಯೋಗ" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) 4ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ಆಯೋಗ;

(ಡಬ್ಲ್ಯೂ) "ವಿಶ್ವವಿದ್ಯಾಲಯ" ಎಂದರೆ, ಈ ಅಧಿನಿಯಮದಡಿಯಲ್ಲಿ ಸ್ಥಾಪಿಸಿ ನಿಗಮಿತಗೊಳಿಸಲಾದ ಪ್ರೆಸಿಡೆನ್ಸಿ ವಿಶ್ವವಿದ್ಯಾಲಯ;

(ಎಕ್ಸ್) "ಸಂದರ್ಶಕರು" ಎಂದರೆ, 13ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ವಿಶ್ವವಿದ್ಯಾಲಯದ ಸಂದರ್ಶಕರು.

## ಅಧ್ಯಾಯ- II

## ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

**3. ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ.**- (1) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಹಕ್ಕನ್ನು ನ್ಯಾಸವು ಹೊಂದಿರತಕ್ಕದ್ದು.

(2) ನ್ಯಾಸವು ರಾಜ್ಯ ಸರ್ಕಾರಕ್ಕೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವವನ್ನು ಸಲ್ಲಿಸತಕ್ಕದ್ದು.

(3) ನ್ಯಾಸವು ಈ ಮುಂದಿನ ವಿವರಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ನ್ಯಾಸದ ವಿವರಗಳೊಂದಿಗೆ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು;

(ii) ವಿಶ್ವವಿದ್ಯಾಲಯದ ವ್ಯಾಪ್ತಿ ಮತ್ತು ಸ್ಥಾನಮಾನ ಹಾಗೂ ಭೂಮಿಯ ಲಭ್ಯತೆ;

(iii) ಪ್ರಾರಂಭದ ದಿನಾಂಕದಿಂದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳಬೇಕೆಂದಿರುವ ಅಧ್ಯಯನ ಮತ್ತು ಸಂಶೋಧನಾ ಕಾರ್ಯಕ್ರಮಗಳ ಸ್ವರೂಪ ಮತ್ತು ಬಗೆಗಳು;

(iv) ಪ್ರಾರಂಭಿಸಬೇಕೆಂದು ಪ್ರಸ್ತಾಪಿಸಿರುವ ವ್ಯಾಸಂಗ ವಿಭಾಗಗಳು (ಫ್ಯಾಕಲ್ಟಿಗಳು), ಅಧ್ಯಯನ ಕ್ರಮಗಳು ಮತ್ತು ಸಂಶೋಧನೆಗಳ ಸ್ವರೂಪ;

(v) ಕಟ್ಟಡಗಳು, ಸಲಕರಣೆಗಳು ಮತ್ತು ರಚನಾ ಸೌಕರ್ಯಗಳನ್ನು ಒದಗಿಸುವಂಥ ಕ್ಯಾಂಪಸ್ ಅಭಿವೃದ್ಧಿ;

(vi) ಪ್ರಾರಂಭದ ದಿನಾಂಕದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಗಾಗಿ ಬಂಡವಾಳ ವೆಚ್ಚದ ಹಂತಗಳು;

(vii) ಬಾಬುವಾರು ಆವರ್ತಕ ವೆಚ್ಚ, ಆರ್ಥಿಕ ಮೂಲಗಳು ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ತಗಲುವ ಅಂದಾಜು ವೆಚ್ಚ;

(viii) ಸಂಪನ್ಮೂಲ ಸಂಗ್ರಹಣೆಗಾಗಿ ಯೋಜನೆ ಮತ್ತು ಅದಕ್ಕೆ ಬಂಡವಾಳದಿಂದ ತಗಲುವ ವೆಚ್ಚ ಹಾಗೂ ಪ್ರತಿಯೊಂದು ಮೂಲಕ್ಕೂ ಮರು ಸಂದಾಯ ಮಾಡುವ ರೀತಿ;.

(ix) ವಿದ್ಯಾರ್ಥಿಗಳಿಂದ ಶುಲ್ಕ ವಸೂಲು ಮಾಡಿ ಆಂತರಿಕವಾಗಿ ನಿಧಿ ಸಂಗ್ರಹಿಸುವ ಯೋಜನೆ, ಸಲಹಾ ಸೇವೆ ಮತ್ತು ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಿಗೆ ಸಂಬಂಧಿಸಿದ ಇತರ ಚಟುವಟಿಕೆಗಳಿಂದ ನಿರೀಕ್ಷಿತ ವರಮಾನಗಳು ಮತ್ತು ಇತರ ನಿರೀಕ್ಷಿತ ವರಮಾನಗಳು;

(x) ಘಟಕವೊಂದಕ್ಕೆ ತಗಲುವ ವೆಚ್ಚದ ವಿವರಗಳು, ಆರ್ಥಿಕವಾಗಿ ದುರ್ಬಲವಾದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕ, ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿ ವೇತನದಲ್ಲಿ ನೀಡುವ ರಿಯಾಯಿತಿ ಅಥವಾ ವಿನಾಯತಿಯ ಪರಿಮಿತಿಯ ವಿವರಗಳನ್ನು ಮತ್ತು ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿ ಗೆ ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳು ಪ್ರಾಯೋಜಿಸಿದ ವಿದ್ಯಾರ್ಥಿಗಳಿಗೆ ಮತ್ತು ಭಾರತವನ್ನುಳಿದು ಇತರ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ವಿಧಿಸತಕ್ಕ ಶುಲ್ಕದ ದರಗಳು ಬೇರೆ ಬೇರೆ ಇದ್ದಲ್ಲಿ ಅವುಗಳನ್ನು ಸೂಚಿಸುವ ಶುಲ್ಕ ರಚನೆಯ ವಿವರಗಳು;

(xi) ಸಂಬಂಧಪಟ್ಟ ವಿದ್ಯಾ ವಿಭಾಗದಲ್ಲಿ ಎಷ್ಟು ವರ್ಷಗಳ ಅನುಭವ ಮತ್ತು ಪರಿಣಿತಿಯನ್ನು ನ್ಯಾಸವು ದೊರಕಿಸಿಕೊಡಲಿದೆ ಹಾಗೂ ಅದರ ಹಣಕಾಸಿನ ಸಂಪನ್ಮೂಲಗಳು;

(xii) ವಿಶ್ವವಿದ್ಯಾಲಯದಲ್ಲಿರುವ ಅಧ್ಯಯನ ಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕಾಗಿ ಇರುವ ವ್ಯವಸ್ಥೆ;

(xiii) ವಿಶ್ವವಿದ್ಯಾಲಯವು ಸ್ಥಾಪನೆಯಾಗುವುದಕ್ಕೆ ಮೊದಲು ನೆರವೇರಿಸಬೇಕೆಂದು ರಾಜ್ಯ ಸರ್ಕಾರವು ಅಗತ್ಯಪಡಿಸಬಹುದಾದ ಅಂಥ ಇತರ ಷರತ್ತುಗಳ ನೆರವೇರಿಕೆಯ ಹಂತ.

(4) ಸ್ವೀಕರಿಸಿದ ಪ್ರಸ್ತಾವಗಳನ್ನು ಪರೀಕ್ಷಿಸಲು ರಾಜ್ಯ ಸರ್ಕಾರವು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಪದನಿಮಿತ್ತ ಸದಸ್ಯರಾದ ಮೂರು ಸದಸ್ಯರುಗಳನ್ನು ಒಳಗೊಂಡ ಒಂದು ಶೋಧನಾ ಸಮಿತಿಯನ್ನು ರಚಿಸತಕ್ಕದ್ದು ಮತ್ತು ಅದು ರಾಜ್ಯ ಸರ್ಕಾರಕ್ಕೆ ಶಿಫಾರಸ್ಸನ್ನು ಮಾಡತಕ್ಕದ್ದು.

**4. ವಿಶ್ವವಿದ್ಯಾಲಯದ ಸ್ಥಾಪನೆ.-** (1) ರಾಜ್ಯ ಸರ್ಕಾರವು ಶೋಧನಾ ಸಮಿತಿಯು ಮಾಡಿದ ಶಿಫಾರಸ್ಸುಗಳನ್ನು ಪರಿಶೀಲಿಸಿದ ತರುವಾಯ ಮತ್ತು ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ,-

(i) ನ್ಯಾಸವು ಸಾಕಷ್ಟು ಮೂಲ ಸೌಕರ್ಯದೊಂದಿಗೆ ವಿಶ್ವವಿದ್ಯಾಲಯವೊಂದನ್ನು ನಡೆಸಲು ಸಮರ್ಥವಾಗಿದೆ ಎಂದು ಅದು ಮನಗಂಡರೆ;

(ii) ಪ್ರದೇಶಕ್ಕನುಸಾರವಾಗಿ ಕೆಳಗೆ ನಿರ್ದಿಷ್ಟಪಡಿಸಿದ ವ್ಯಾಪ್ತಿಗೆ ಭೂಮಿಯ ಒಡೆತನವನ್ನು ಹೊಂದಿರತಕ್ಕದ್ದು, ಎಂದರೆ:-

(ಎ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯೊಳಗಿದ್ದರೆ ಇಪ್ಪತ್ತೈದು ಎಕರೆಗಳು;

(ಬಿ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯಿಂದ ಹೊರಗೆ ಇದ್ದು, ಆದರೆ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಪ್ರದೇಶದ ಒಳಗೆ ಇದ್ದರೆ ನಲವತ್ತು ಎಕರೆಗಳು;

(ಸಿ) ಭೂಮಿಯು (ಎ) ಮತ್ತು (ಬಿ) ಖಂಡಗಳಲ್ಲಿ ನಿರ್ದಿಷ್ಟಪಡಿಸಿದ ಸ್ಥಳಗಳನ್ನು ಹೊರತುಪಡಿಸಿದ್ದರೆ ಅರವತ್ತು ಎಕರೆಗಳಿಗಿಂತ ಕಡಿಮೆ ಇರತಕ್ಕದ್ದಲ್ಲ.

ಮೇಲೆ ನಿರ್ದಿಷ್ಟಪಡಿಸಿದ ಭೂಮಿಯು ಏಕ ಘಟಕ(ಸಿಂಗಲ್ ಬ್ಲಾಕ್) ದಲ್ಲಿರತಕ್ಕದ್ದು ಮತ್ತು ಇದು ಸಂಬಂಧಪಟ್ಟ ನ್ಯಾಸ/ಸಂಸ್ಥೆ/ವಿಶ್ವವಿದ್ಯಾಲಯದ ಹೆಸರಿನಲ್ಲಿರತಕ್ಕದ್ದು. 3ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ಅಗತ್ಯಪಡಿಸಲಾದಂತೆ ಒದಗಿಸಿದ ವಿವರಗಳ ಆಧಾರದ ಮೇಲೆ ಸರ್ಕಾರವು 47ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಬೇಕೆಂದು ನ್ಯಾಸಕ್ಕೆ ನಿರ್ದೇಶನ ನೀಡಬಹುದು.

(2) ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಸ್ಥಾಪನೆಯ ತರುವಾಯ, ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, "ಪ್ರೆಸಿಡೆನ್ಸಿ ವಿಶ್ವವಿದ್ಯಾಲಯ" ಎಂಬ ಹೆಸರಿನ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ರಾಜ್ಯದಲ್ಲಿ ಸ್ಥಾಪಿಸುವುದಕ್ಕೆ ಮಂಜೂರಾತಿಯನ್ನು ನೀಡಬಹುದು.

(3) ವಿಶ್ವವಿದ್ಯಾಲಯದ ಕೇಂದ್ರ ಕಾರ್ಯಸ್ಥಾನವು ಬೆಂಗಳೂರಿನಲ್ಲಿ ಇರತಕ್ಕದ್ದು. ವಿಶ್ವವಿದ್ಯಾಲಯವು ತನ್ನ ಕ್ಯಾಂಪಸ್ಸುಗಳನ್ನು ಅಥವಾ ಪ್ರಾದೇಶಿಕ ಕೇಂದ್ರಗಳನ್ನು, ಅಧ್ಯಯನ ಕೇಂದ್ರಗಳನ್ನು ಕರ್ನಾಟಕದ ಯಾವುದೇ ಭಾಗದಲ್ಲಿ ಹೊಂದಿರತಕ್ಕದ್ದು ಮತ್ತು ಆ ಬಗ್ಗೆ ರಾಜ್ಯ ಸರ್ಕಾರದ ಪೂರ್ವಾನುಮತಿಯನ್ನು ಪಡೆದುಕೊಳ್ಳುವುದಕ್ಕೊಳಪಟ್ಟು ಹಾಗೂ ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗನುಸಾರವಾಗಿ ಹೊಂದಿರತಕ್ಕದ್ದು.

(4) ಮೊದಲ ಕುಲಾಧಿಪತಿಯವರು, ಮೊದಲ ಕುಲಪತಿಯವರು, ಪ್ರಬಂಧಕ ಮಂಡಳಿಯ ಮೊದಲ ಸದಸ್ಯರುಗಳು, ವ್ಯವಸ್ಥಾಪನಾ ಮಂಡಳಿಯ ಹಾಗೂ ಶೈಕ್ಷಣಿಕ ಪರಿಷತ್ತಿನ ಮೊದಲ ಸದಸ್ಯರುಗಳು ಮತ್ತು ಇನ್ನು ಮುಂದೆ, ಅಂಥ ಅಧಿಕಾರಿಗಳು ಅಥವಾ ಸದಸ್ಯರುಗಳಾಗಬಹುದಾದಂಥ ಎಲ್ಲಾ ವ್ಯಕ್ತಿಗಳು, ಅಂಥ ಪದ ಅಥವಾ ಸದಸ್ಯತ್ವವನ್ನು ಹೊಂದಿರುವುದು ಮುಂದುವರೆಯುವವರೆಗೆ, ಒಂದು ನಿಗಮಿತ ನಿಕಾಯವನ್ನು ರಚಿಸತಕ್ಕದ್ದು. ಮತ್ತು ಅದು ವಿಶ್ವವಿದ್ಯಾಲಯದ ಹೆಸರಿನಲ್ಲಿ ದಾವೆ ಹೂಡಬಹುದು ಮತ್ತು ದಾವೆಗೊಳಗಾಗಬಹುದು.

(5) (2)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯವು ಸ್ಥಾಪನೆಗೆ ಮಂಜೂರಾತಿಯಾದ ಮೇಲೆ, ವಿಶ್ವವಿದ್ಯಾಲಯದ ಉದ್ದೇಶಕ್ಕಾಗಿ, ನ್ಯಾಸವು ಆರ್ಜಿಸಿದ, ಸೃಜಿಸಿದ, ಏರ್ಪಾಟು ಮಾಡಿಕೊಂಡ ಅಥವಾ ಕಟ್ಟಲ್ಪಟ್ಟ ಭೂಮಿ ಮತ್ತು ಇತರ ಸ್ಥಿರ ಮತ್ತು ಚರ ಸ್ವತ್ತು, ವಿಶ್ವವಿದ್ಯಾಲಯದಲ್ಲಿ ನಿಹಿತವಾಗಿರತಕ್ಕದ್ದು.

(6) ವಿಶ್ವವಿದ್ಯಾಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದ ಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂಥ ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

(7) ವಿಶ್ವವಿದ್ಯಾಲಯದಲ್ಲಿನ ಭೂಮಿ, ಕಟ್ಟಡ ಮತ್ತು ಇತರ ಸ್ವತ್ತುಗಳನ್ನು ವಿಶ್ವವಿದ್ಯಾಲಯದ ಉದ್ದೇಶಗಳಿಗೆ ಆನುಷಂಗಿಕವಾಗಿರುವುದನ್ನು ಹೊರತುಪಡಿಸಿ ಇತರ ಯಾವುದೇ ಉದ್ದೇಶಕ್ಕಾಗಿ ಬಳಸತಕ್ಕದ್ದಲ್ಲ.

5. **ಅನುದಾನಗಳು ಮತ್ತು ಹಣಕಾಸು ನೆರವು.**- ವಿಶ್ವವಿದ್ಯಾಲಯವು ಸ್ವಂತ ಧನಮೂಲ ಉಳ್ಳದ್ದಾಗಿರತಕ್ಕದ್ದು ಮತ್ತು ರಾಜ್ಯದಿಂದ ಅಥವಾ ರಾಜ್ಯದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಇತರ ಸಂಸ್ಥೆ ಅಥವಾ ನಿಗಮದಿಂದ ಯಾವುದೇ ನಿರ್ವಹಣಾ ಸಹಾಯ ಅನುದಾನ ಅಥವಾ ಯಾವುದೇ ಹಣಕಾಸು ನೆರವನ್ನು ಹಕ್ಕಿನಿಂದ ಕೇಳತಕ್ಕದ್ದಲ್ಲ ಅಥವಾ ಅದನ್ನು ಪಡೆಯಲು ಹಕ್ಕನ್ನು ಹೊಂದಿರತಕ್ಕದ್ದಲ್ಲ:

ಪರಂತು, ರಾಜ್ಯವು,-

(ಎ) ಇತರ ರಾಜ್ಯ ಸರ್ಕಾರದ ಸಂಘಟನೆಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿರುವಂಥದ್ದೇ ಸಂಶೋಧನೆ, ಅಭಿವೃದ್ಧಿ ಮತ್ತಿತರ ಚಟುವಟಿಕೆಗಳಿಗಾಗಿ; ಅಥವಾ

(ಬಿ) ಸರ್ಕಾರದಿಂದ ನೆರವನ್ನು ಪಡೆಯುವ ಯಾವುದೇ ನಿರ್ದಿಷ್ಟ ಸಂಶೋಧನೆ ಅಥವಾ ಕಾರ್ಯಕ್ರಮಗಳಿಗಾಗಿ; ಮತ್ತು

(ಸಿ) ರಾಜ್ಯ ಕಾರ್ಯನೀತಿಯ ಬದಲಾವಣೆಗೆ ಒಳಪಟ್ಟು ಅಥವಾ ಅನ್ಯಥಾ ಇದೇ ಬಗೆಯ ವಿಶ್ವವಿದ್ಯಾಲಯಗಳಿಗೆ ಅವಕಾಶವನ್ನು ಕಲ್ಪಿಸುವುದಕ್ಕೆ ಅಥವಾ ಅವುಗಳ ಪ್ರಯೋಜನಕ್ಕಾಗಿ,

- ಅನುದಾನದ ಮೂಲಕ ಅಥವಾ ಅನ್ಯಥಾ ಹಣಕಾಸು ಬೆಂಬಲವನ್ನು ಒದಗಿಸಬಹುದು:

ಮತ್ತು ಪರಂತು, ವಿಶ್ವವಿದ್ಯಾಲಯವು, ಯಾವುದೇ ಇತರ ಮೂಲದಿಂದ ಯಾವುದೇ ಆರ್ಥಿಕ ನೆರವನ್ನು ಸ್ವೀಕರಿಸಬಹುದು.

6. **ಘಟಕ ಕಾಲೇಜು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಅಥವಾ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದಕ್ಕೆ ಅಧಿಕಾರ.**- ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಐದು ವರ್ಷಗಳನ್ನು ಪೂರ್ಣಗೊಳಿಸಿದ ನಂತರ, ವಿಶ್ವವಿದ್ಯಾಲಯ ಅನುದಾನ ಆಯೋಗದ ಮತ್ತು ಇತರ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ಗುಣಮಟ್ಟಗಳಿಗೆ ಒಳಪಟ್ಟು, ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ, ವಿಶ್ವವಿದ್ಯಾಲಯವು, ರಾಜ್ಯದಲ್ಲಿ ತನಗೆ ಸೂಕ್ತವೆನಿಸುವಂಥ ಸ್ಥಳಗಳಲ್ಲಿ ಘಟಕ ಕಾಲೇಜುಗಳು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದಿರಬಹುದು.

7. **ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು.**- ವಿಶ್ವವಿದ್ಯಾಲಯವು, ತನ್ನ ಭವಿಷ್ಯದ್‌ದೃಷ್ಟಿ ಮತ್ತು ಧ್ಯೇಯೋದ್ದೇಶಗಳನ್ನು ಸಾಧಿಸಲು ಈ ಮುಂದಿನಂತೆ ವಿವಿಧ ಬಗೆಯ ಕಾರ್ಯತಂತ್ರಗಳನ್ನು ಕೈಗೊಳ್ಳಬಹುದು:-

(i) ಬಿಸಿನೆಸ್ ಅಂಡ್ ಮ್ಯಾನೇಜ್‌ಮೆಂಟ್ ಸ್ಟಡೀಸ್, ಜೀವ ವಿಜ್ಞಾನಗಳು, ಕಂಪ್ಯೂಟರ್ ಸೈನ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಹಾಗೂ ಇತರ ತಾಂತ್ರಿಕ ಕೋರ್ಸುಗಳು, ವೈದ್ಯಕೀಯ ವಿಜ್ಞಾನಗಳು ಮತ್ತು ಸಂಬಂಧಿತ ವಲಯಗಳಲ್ಲಿ ಸ್ನಾತಕೋತ್ತರ, ಡಾಕ್ಟೊರಲ್ ಮತ್ತು ಪೋಸ್ಟ್ ಡಾಕ್ಟೊರಲ್ ಕೋರ್ಸುಗಳಿಗೆ ಮುಂದುವರಿಯುವ ಮತ್ತು ಅವುಗಳನ್ನು ಒಳಗೊಳ್ಳುವ ವಿಶ್ವವಿದ್ಯಾಲಯ ಶಿಕ್ಷಣದಲ್ಲಿ ಪ್ರಗತಿಯನ್ನು ಮತ್ತು ಅನ್ವೇಷಣೆಯನ್ನು ಬೆಂಬಲಿಸುವುದು, ಪ್ರೋತ್ಸಾಹಿಸುವುದು ಮತ್ತು ಕೈಗೊಳ್ಳುವುದು ಹಾಗೂ ಈ ಕ್ಷೇತ್ರಗಳಲ್ಲಿ ಸಲಹೆಯನ್ನೂ ಒಳಗೊಂಡಂತೆ ಸಂಶೋಧನೆ, ಪ್ರಗತಿ ಮತ್ತು ಪ್ರಸಾರಕ್ಕೆ ಅವಕಾಶವನ್ನು ಕಲ್ಪಿಸುವುದು;

(ii) ವಿದ್ಯಾರ್ಥಿಗಳಿಗೆ, ಬೋಧಕ ವೃಂದದ (ಫ್ಯಾಕಲ್ಟಿ) ಸದಸ್ಯರಿಗೆ ಮತ್ತು ಇತರರಿಗೆ ನಿರ್ದಿಷ್ಟ ಶೈಕ್ಷಣಿಕ ಮತ್ತು ಸಂಶೋಧನಾ ಕಾರ್ಯಕ್ರಮಗಳನ್ನು, ತರಬೇತಿ ಕಾರ್ಯಕ್ರಮಗಳನ್ನು ಮತ್ತು ವಿನಿಮಯ ಕಾರ್ಯಕ್ರಮಗಳನ್ನು ಪರಿಕಲ್ಪಿಸಲು, ವಿನ್ಯಾಸಗೊಳಿಸಲು, ಅಭಿವೃದ್ಧಿಪಡಿಸಲು ಇತರ ಯಾವುದೇ ವಿಶ್ವವಿದ್ಯಾಲಯಗಳು, ಸಂಶೋಧನಾ ಸಂಸ್ಥೆಗಳು, ಲಾಭರಹಿತ ಸಂಸ್ಥೆಗಳು, ಕೈಗಾರಿಕಾ ಸಂಸ್ಥೆಗಳು, ವೃತ್ತಿಪರ ಸಂಸ್ಥೆಗಳು ಅಥವಾ ಇತರ ಸಂಸ್ಥೆಗಳೊಂದಿಗೆ ಸಹಯೋಗವನ್ನು ಹೊಂದುವುದು;

(iii) ರಾಜ್ಯ ಸರ್ಕಾರದ ಪೂರ್ವ ಅನುಮೋದನೆಯೊಡನೆ, ಯಾವುದೇ ಸಂಸ್ಥೆಯೊಂದಿಗೆ ಸಹಯೋಗ ಹೊಂದಿ ಸಂಶೋಧನೆಯನ್ನು ಮತ್ತು ಹೊಸತನವನ್ನು ಬೆಳಕಿಗೆ ತರುವುದು;

(iv) ತಾನು ಸೂಕ್ತವೆಂದು ಭಾವಿಸಬಹುದಾದಂತೆ, ಕಲಿಕೆಯ ಅಂಥ ಶಾಖೆಗಳಲ್ಲಿ ಬೋಧನಾ ಮತ್ತು ಸಂಶೋಧನಾ ಸೌಲಭ್ಯಗಳನ್ನು ಒದಗಿಸಿ ಜ್ಞಾನ ಪ್ರಸಾರ ಮಾಡುವುದು ಮತ್ತು ಅದನ್ನು ಮುಂದುವರೆಸುವುದು ಹಾಗೂ ವಿಶೇಷವಾಗಿ ತಾಂತ್ರಿಕ, ಆರೋಗ್ಯ, ವ್ಯವಸ್ಥಾಪನೆ, ಜೀವ ವಿಜ್ಞಾನಗಳು ಮತ್ತು ಸಂಬಂಧಿತ ಕೋರ್ಸುಗಳಲ್ಲಿ ಸಮಗ್ರ ವ್ಯಾಸಂಗ ವಿಷಯಗಳಿಗಾಗಿ ವಿಶೇಷ ಉಪಬಂಧ ಕಲ್ಪಿಸುವುದು ಮತ್ತು ವಿಶ್ವವಿದ್ಯಾಲಯದಲ್ಲಿ

ಅಂತರವಿದ್ಯಾವಿಷಯಗಳ ಅಧ್ಯಯನ ಮತ್ತು ಸಂಶೋಧನೆಗೆ ಉತ್ತೇಜನ ನೀಡುವುದಕ್ಕಾಗಿ ಸೂಕ್ತ ಕ್ರಮ ಕೈಗೊಳ್ಳುವುದು;

(v) ಇಂಜಿನಿಯರಿಂಗ್ ಪರಿಹಾರಗಳನ್ನೊದಗಿಸುವ ಭವಿಷ್ಯದ ಸಮರ್ಥವಾದ ತಾಂತ್ರಿಕತೆಗಳ ಸಂಶೋಧನೆಯೊಂದಿ, ಮತ್ತು ತಾಂತ್ರಿಕ ವ್ಯವಹಾರ ಮತ್ತು ಬೆಳೆಯುತ್ತಿರುವ ತಾಂತ್ರಿಕತೆಗೆ ಬೆಂಬಲದೊಂದಿಗೆ ಉನ್ನತ ತಾಂತ್ರಿಕ ಮತ್ತು ವೃತ್ತಿಪರ ಕೈಗಾರಿಕೆಗಳ ಬೇಡಿಕೆಗಳನ್ನು ಈಡೇರಿಸುವುದು;

(vi) ಉನ್ನತ ಕಲಿಕೆಗೆ ಪ್ರವೇಶಾವಕಾಶಗಳನ್ನು ಮತ್ತು ನ್ಯಾಯಸಮ್ಮತತೆಗೆ ಉತ್ತೇಜನ ನೀಡುವ ದೃಷ್ಟಿಯಿಂದ, ಕಲಿಕೆಯ ವಿಧಾನಗಳು ಮತ್ತು ಸ್ಥಳಗಳು, ವ್ಯಾಸಂಗ ಕ್ರಮಗಳ ಸಂಯೋಜನೆ, ದಾಖಲಾತಿಗಾಗಿ ಅರ್ಹತೆ, ಪ್ರವೇಶದ ವಯಸ್ಸು, ಪರೀಕ್ಷೆಯನ್ನು ನಡೆಸುವುದು ಮತ್ತು ಕಾರ್ಯಕ್ರಮಗಳ ನಿರ್ವಹಣೆಗೆ ಸಂಬಂಧಿಸಿದಂತೆ ನಮ್ಯವಾದ (ಫ್ಲೆಕ್ಸಿಬಲ್) ಮತ್ತು ಮುಕ್ತವಾದ, ವಿಶ್ವವಿದ್ಯಾಲಯ ಮಟ್ಟದ ಶಿಕ್ಷಣದ ಅನ್ವೇಷಣಾ ಪದ್ಧತಿಯನ್ನು ಅಳವಡಿಸುವುದು ಹಾಗೂ ಜ್ಞಾನದ ಹೊಸ ಕ್ಷೇತ್ರಗಳಲ್ಲಿ ಉತ್ಕೃಷ್ಟತೆಗೆ ಪ್ರೋತ್ಸಾಹಿಸುವುದು, ಶೈಕ್ಷಣಿಕ ಮತ್ತು ಸಮನ್ವಯ ಕಲಿಕೆ, ಇವೆರೆಡಕ್ಕೂ ಸಮನಾದ ಪ್ರಾಮುಖ್ಯತೆಯನ್ನು ನೀಡುವುದು;

(vii) ಗುಣಮಟ್ಟದ ಶಿಕ್ಷಣಕ್ಕಾಗಿ ಕೊಡುಗೆಯನ್ನು ನೀಡಲು ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಸಂಪನ್ಮೂಲ ಕೇಂದ್ರಗಳನ್ನು ಅಭಿವೃದ್ಧಿಪಡಿಸುವುದು;

(viii) ಕರ್ನಾಟಕದಲ್ಲಿ ವಿವಿಧ ಸ್ಥಳಗಳಲ್ಲಿ ಕ್ಯಾಂಪಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳು ಮತ್ತು ಸಂಯೋಜಿತ ಕಾಲೇಜುಗಳನ್ನು ಸ್ಥಾಪಿಸುವುದು ಮತ್ತು ತಾಂತ್ರಿಕತೆ, ವೃತ್ತಿಪರತೆ, ಸಾಮಾನ್ಯ ಶಿಕ್ಷಣ ಮತ್ತು ಸಮಾಜ ಮತ್ತು ಮಾನವ ಅಭಿವೃದ್ಧಿಯಲ್ಲಿ ಶೈಕ್ಷಣಿಕ ಬದಲಾವಣೆಗೆ ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಕೊಡುಗೆ ನೀಡುವುದು ಮತ್ತು ಜ್ಞಾನವನ್ನು ಅಭಿವೃದ್ಧಿಪಡಿಸುವುದು;

(ix) ಮೌಲ್ಯಮಾಪನದ ವಿವಿಧ ಆಧುನಿಕ ವಿಧಾನಗಳ ಮೂಲಕ ಮಾಡಿದ ಮೌಲ್ಯಮಾಪನಕ್ಕೆ ಅನುಸಾರವಾಗಿ ಶಿಕ್ಷಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದುದರ ಆಧಾರದ ಮೇಲೆ ನೀಡಲು ಪದವಿಗಳನ್ನು, ಡಿಪ್ಲೋಮೋಗಳನ್ನು, ಪ್ರಮಾಣಪತ್ರಗಳನ್ನು ಮತ್ತು ಯಶೋಪತ್ರ ಪ್ರದಾನದಂಥ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(x) ಉಪನ್ಯಾಸ ಮಾಲಿಕೆಗಳು, ವಿಚಾರ ಸಂಕಿರಣಗಳು, ಸಮ್ಮೇಳನಗಳು, ಕಾರ್ಯಾಂಗ ಶಿಕ್ಷಣ ಕಾರ್ಯಕ್ರಮಗಳು, ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳು, ಪ್ರಕಟಣೆಗಳು ಮತ್ತು ತರಬೇತಿ ಕಾರ್ಯಕ್ರಮಗಳು ಮತ್ತು ಕಾರ್ಯಸೂಚಿಗಳ ಮೂಲಕ ಜ್ಞಾನ ಪ್ರಸಾರ ಮಾಡುವುದು ಮತ್ತು ಶಿಕ್ಷಣ ಮತ್ತು ತತ್ಸಂಬಂಧಿತ ಅಭಿವೃದ್ಧಿ ಕ್ಷೇತ್ರಗಳ ವಿಷಯಗಳ ಬಗ್ಗೆ ಸಾರ್ವಜನಿಕ ಚರ್ಚೆಯನ್ನು ಏರ್ಪಡಿಸುವುದು;

(xi) ರಾಜ್ಯ ಸರ್ಕಾರದ ಪೂರ್ವ ಅನುಮತಿಯೊಂದಿಗೆ, ಉತ್ತಮ ಗುಣಮಟ್ಟದ ಇತರ ಯಾವುವೇ ವಿಶ್ವವಿದ್ಯಾಲಯಗಳೊಂದಿಗೆ ಸಹಭಾಗಿಗಳಾಗಿ ವಿಶ್ವವಿದ್ಯಾಲಯದ ಬೋಧಕ ವೃಂದ (ಫ್ಯಾಕಲ್ಟಿ) ಮತ್ತು ಸಂಶೋಧಕರ ಅಭಿವೃದ್ಧಿ ಮತ್ತು ತರಬೇತಿಗಾಗಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು;

(xii) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದಕ್ಕಾಗಿ ಮತ್ತು ಉತ್ತೇಜಿಸುವುದಕ್ಕಾಗಿ ಅವಶ್ಯಕವಾದ ಮತ್ತು ಯುಕ್ತವಾದ ಕ್ರಮಗಳನ್ನು ಕೈಗೊಳ್ಳುವುದು;

(xiii) ಭಾರತದಲ್ಲಿ ಶಿಕ್ಷಣ ಮತ್ತು ಇತರ ಅಭಿವೃದ್ಧಿ ವಲಯಗಳನ್ನು ವಿಸ್ತರಿಸುವುದಕ್ಕಾಗಿ ಸರ್ಕಾರವು ಅನುಮೋದಿಸಬಹುದಾದಂತೆ ಯಾವುವೇ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದು.

8. **ವಿಶ್ವವಿದ್ಯಾಲಯದ ಅಧಿಕಾರಗಳು**.– ವಿಶ್ವವಿದ್ಯಾಲಯವು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗೆ ಅನುಸಾರವಾಗಿ ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿರ್ಧರಿಸಬಹುದಾದಂತೆ ಕ್ಯಾಂಪಸ್ಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಕರ್ನಾಟಕದಲ್ಲಿ ಸ್ಥಾಪಿಸುವುದು ಮತ್ತು ನಿರ್ವಹಿಸುವುದು;

(ii) ವಿಶ್ವವಿದ್ಯಾಲಯದ ಉದ್ದೇಶವನ್ನು ಕಾರ್ಯರೂಪಕ್ಕೆ ತರುವಲ್ಲಿ ಅಗತ್ಯವಾಗಬಹುದಾದ ಅಥವಾ ಕಾರ್ಯಸಾಧ್ಯವಾಗಬಹುದಾದ ಎಲ್ಲಾ ಅಂಥ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು;

(iii) ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಮತ್ತು ಷರತ್ತುಗಳಿಗೊಳಪಟ್ಟು ಪದವಿಗಳು ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರದಾನಮಾಡುವುದು;

(iv) ಪರಿನಿಯಮಗಳನ್ವಯ ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿ ವೇತನಗಳು ಮತ್ತು ಬಹುಮಾನಗಳು, ಅವಾರ್ಡುಗಳು, ಪಾರಿತೋಷಕಗಳು ಇತ್ಯಾದಿಗಳನ್ನು ಸ್ಥಾಪಿಸುವುದು ಮತ್ತು ನೀಡುವುದು;

(v) ಪರಿನಿಯಮಗಳಲ್ಲಿ ಅಥವಾ ಸಂದರ್ಭಾನುಸಾರವಾಗಿ ನಿಯಮಗಳಲ್ಲಿ ನಿಗದಿಪಡಿಸಬಹುದಾದ ಅಂಥ ಶುಲ್ಕಗಳು, ಬಿಲ್ಲುಗಳು, ಖರೀದಿ ಪಟ್ಟಿಗಳನ್ನು ಕೇಳಿಪಡೆದುಕೊಳ್ಳುವುದು ಮತ್ತು ಸ್ವೀಕರಿಸುವುದು ಹಾಗೂ ಚಾರ್ಜುಗಳನ್ನು ವಸೂಲು ಮಾಡುವುದು;

(vi) ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಪಠ್ಯೇತರ ಚಟುವಟಿಕೆಗಳಿಗೆ ಅವಕಾಶಗಳನ್ನು ಕಲ್ಪಿಸುವುದು;

(vii) ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಕ್ಯಾಂಪಸುಗಳ, ಪ್ರಾದೇಶಿಕ ಕೇಂದ್ರಗಳ, ಅಧ್ಯಯನ ಕೇಂದ್ರಗಳ ಫ್ಯಾಕಲ್ಟಿ, ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವುದು;

(viii) ವಿಶ್ವವಿದ್ಯಾಲಯದ ಅಥವಾ ಒಂದು ಘಟಕ ಕಾಲೇಜಿನ ಅಥವಾ ಕ್ಯಾಂಪಸ್ಸಿನ, ಪ್ರಾದೇಶಿಕ ಕೇಂದ್ರದ, ಅಧ್ಯಯನ ಕೇಂದ್ರದ ಉದ್ದೇಶಕ್ಕಾಗಿ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದಿರುವ, ಯಾವುದೇ ರೀತಿಯ ಸ್ವಯಂ ದೇಣಿಗೆಗಳು ಮತ್ತು ಕೊಡುಗೆಗಳನ್ನು ಸ್ವೀಕರಿಸುವುದು ಮತ್ತು ನ್ಯಾಸ ಮತ್ತು ದತ್ತಿ ಸ್ವತ್ತುಗಳೂ ಸೇರಿದಂತೆ, ಯಾವುದೇ ಚರ ಅಥವಾ ಸ್ಥಿರ ಸ್ವತ್ತನ್ನು ಆರ್ಜಿಸುವುದು, ಹೊಂದಿರುವುದು, ನಿರ್ವಹಿಸುವುದು, ನಡೆಸುವುದು ಮತ್ತು ಹಸ್ತಾಂತರ ಮಾಡುವುದು;

(ix) ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸಿಕೊಂಡು ಬರುವುದು ಹಾಗೂ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ ವಿದ್ಯಾರ್ಥಿಗಳಿಗೆ ವಸತಿ ಸ್ಥಳಗಳಾಗಿ ಮಾನ್ಯತೆ ನೀಡುವುದು;

(x) ವಸತಿಯ ಮೇಲ್ವಿಚಾರಣೆ ಮಾಡುವುದು ಮತ್ತು ನಿಯಂತ್ರಣ ಮಾಡುವುದು ಹಾಗೂ ವಿದ್ಯಾರ್ಥಿಗಳು ಮತ್ತು ಎಲ್ಲಾ ಪ್ರವರ್ಗಗಳ ಸಿಬ್ಬಂದಿಗಳಲ್ಲಿ ಶಿಸ್ತು ನಿಯಂತ್ರಣ ಮಾಡುವುದು ಮತ್ತು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ನಡತೆ ಸಂಹಿತೆಯನ್ನು ರೂಪಿಸುವುದೂ ಒಳಗೊಂಡಂತೆ, ಅಂಥ ಸಿಬ್ಬಂದಿಗಳ ಸೇವಾಷರತ್ತುಗಳನ್ನು ನಿರೂಪಿಸುವುದು;

(xi) ಶೈಕ್ಷಣಿಕ, ಆಡಳಿತಾತ್ಮಕ ಮತ್ತು ಬೆಂಬಲ ಸಿಬ್ಬಂದಿಯ ಹುದ್ದೆಗಳನ್ನು ಮತ್ತು ಇತರ ಅವಶ್ಯ ಹುದ್ದೆಗಳನ್ನು ಸೃಜಿಸುವುದು;

(xii) ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ಉದ್ದೇಶಗಳಿಗಾಗಿ ಇತರ ವಿಶ್ವವಿದ್ಯಾಲಯಗಳೊಡನೆ ಸಹಕರಿಸುವುದು ಮತ್ತು ಸಹಯೋಗ ಹೊಂದುವುದು;

(xiii) ಶಿಕ್ಷಕರಿಗೆ, ಪಾಠಗಳನ್ನು ರಚಿಸುವವರಿಗೆ, ಮೌಲ್ಯಮಾಪಕರಿಗೆ ಮತ್ತಿತರ ಶೈಕ್ಷಣಿಕ ಸಿಬ್ಬಂದಿಗೆ ಪುನರ್ಮನನ ವ್ಯಾಸಂಗಕ್ರಮಗಳು, ಅಭಿಮುಖ ವ್ಯಾಸಂಗ ಕ್ರಮಗಳು, ಕಾರ್ಯಾಗಾರಗಳು, ವಿಚಾರಗೋಷ್ಠಿಗಳು ಮತ್ತಿತರ ಕಾರ್ಯಕ್ರಮಗಳನ್ನು ಏರ್ಪಡಿಸುವುದು ಮತ್ತು ನಡೆಸುವುದು;

(xiv) ಶೈಕ್ಷಣಿಕ ಪರಿಷತ್ತಿನ ಅನುಮೋದನೆಯೊಂದಿಗೆ ವಿಶ್ವವಿದ್ಯಾಲಯಕ್ಕೆ ಅಥವಾ ಘಟಕ ಕಾಲೇಜಿಗೆ, ಪ್ರಾದೇಶಿಕ ಕೇಂದ್ರಗಳಿಗೆ, ಅಧ್ಯಯನ ಕೇಂದ್ರಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮತ್ತು ಈ ಅಧಿನಿಯಮದಲ್ಲಿ ಕಲ್ಪಿಸಿದ ವ್ಯಾಪ್ತಿಗಿಂತ ಕಡಿಮೆಯಿಲ್ಲದಂತೆ ಕರ್ನಾಟಕದ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮಾನಕ ಗುಣಮಟ್ಟಗಳನ್ನು ನಿರ್ಧರಿಸುವುದು;

(xv) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಕಾರ್ಯರೂಪಕ್ಕೆ ತರಲು ಅವಶ್ಯವಾಗಬಹುದಾದಂಥ ಇತರ ಎಲ್ಲಾ ಕ್ರಮಗಳನ್ನು ಅಥವಾ ಕಾರ್ಯಗಳನ್ನು, ಅವು ಮೇಲೆ ಹೇಳಿದ ಅಧಿಕಾರಗಳಿಗೆ ಪ್ರಾಸಂಗಿಕವಾಗಿರಲಿ ಅಥವಾ ಇಲ್ಲದಿರಲಿ, ಕೈಗೊಳ್ಳುವುದು;

(xvi) ಪರೀಕ್ಷೆಗಳ ಆಧಾರದ ಮೇಲೆ ಅಥವಾ ಸರ್ಕಾರದಿಂದ ಅನುಮೋದಿತವಾದ ಇತರ ಯಾವುದೇ ಮೌಲ್ಯಮಾಪನ ವಿಧಾನದ ಆಧಾರದ ಮೇಲೆ ನೀಡಲು ಪದವಿಗಳು, ಡಿಪ್ಲೋಮಾಗಳು, ಪ್ರಮಾಣಪತ್ರಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಸ್ಥಾಪಿಸುವುದು;

(xvii) ಫಿಲಂಗಳು, ಕ್ಯಾಸೆಟ್‌ಗಳು, ಧ್ವನಿಸುರುಳಿಗಳು, ದೃಶ್ಯಸುರುಳಿಗಳು, ಸಿ.ಡಿ., ವಿ.ಸಿ.ಡಿ. ಮತ್ತು ಇತರ ತಂತ್ರಾಂಶಗಳೂ ಹಾಗೂ ಇತರ ಸಂಬಂಧಿತ ವಿದ್ಯುನ್ಮಾನ ಮತ್ತು ಮುದ್ರಣ ಮಾಧ್ಯಮ ಸೇರಿದಂತೆ ಬೋಧಕ ಸಾಮಗ್ರಿಗಳನ್ನು ತಯಾರಿಸುವುದಕ್ಕಾಗಿ ಅವಕಾಶ ಕಲ್ಪಿಸುವುದು;

(xviii) ಪ್ರಬಂಧಕ ಮಂಡಳಿಯ ಅನುಮೋದನೆಯೊಡನೆ ವಿಶ್ವವಿದ್ಯಾಲಯದ ಉದ್ದೇಶಗಳಿಗಾಗಿ ವಿಶ್ವವಿದ್ಯಾಲಯದ ಸ್ವತ್ತುಗಳನ್ನು ಭದ್ರತೆಯಾಗಿ ನೀಡಿ ಅಥವಾ ನೀಡದೆ ಹಣವನ್ನು ಪಡೆಯುವುದು, ಸಂಗ್ರಹಿಸುವುದು, ಚಂದಾದಾರರಾಗುವುದು ಮತ್ತು ಸಾಲ ಪಡೆಯುವುದು;

(xix) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುದೇ ಇತರ ಶೈಕ್ಷಣಿಕ ಸಂಸ್ಥೆಗಳ ಆಡಳಿತವನ್ನು ವಶಪಡಿಸಿಕೊಳ್ಳುವುದು, ವಹಿಸಿಕೊಳ್ಳುವುದು ಮತ್ತು ನಡೆಸುವುದು;

(xx) ಕಾರ್ಯಕಾರಿ ಪರಿಷತ್ತು ಪೂರ್ವಾನುಮೋದನೆಯೊಂದಿಗೆ ಸ್ವತ್ತುಗಳನ್ನು ಆರ್ಜಿಸುವುದು;

(xxi) ವಿಶ್ವವಿದ್ಯಾಲಯದ ಮೇಲಿನ ಉದ್ದೇಶಗಳಿಗೆ ಸಂಬಂಧಿಸಿದ ಅಥವಾ ಪ್ರಾಸಂಗಿಕವಾದ ಯಾವುದೇ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು.

**9. ವಿಶ್ವವಿದ್ಯಾಲಯವು ಎಲ್ಲಾ ವರ್ಗಗಳು, ಜಾತಿಗಳು, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲರಿಗೂ ಮುಕ್ತವಾಗಿರತಕ್ಕದ್ದು.–** ವಿಶ್ವವಿದ್ಯಾಲಯದ ಪ್ರವೇಶಗಳು ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲಾ ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು. ಎಲ್ಲಾ ಪ್ರವೇಶಗಳನ್ನು ಅರ್ಹತಾ ಪರೀಕ್ಷೆಗಳಲ್ಲಿನ ಅರ್ಹತೆಯ ಆಧಾರದ ಮೇಲೆ ಮಾಡತಕ್ಕದ್ದು:

ಪರಂತು, ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳ ಪ್ರವೇಶದಲ್ಲಿ ಶೇಕಡಾ ನಲವತ್ತರಷ್ಟನ್ನು ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ಮೀಸಲಿಡತಕ್ಕದ್ದು ಮತ್ತು ಪ್ರವೇಶಗಳನ್ನು ರಾಜ್ಯ ಸರ್ಕಾರವು ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡತಕ್ಕದ್ದು ಮತ್ತು ಸೀಟುಗಳನ್ನು ಅರ್ಹತೆ ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ರೂಪಿಸುವ ಮೀಸಲಾತಿ ನೀತಿಗೆ ಅನುಸಾರವಾಗಿ ಹಂಚಿಕೆ ಮಾಡತಕ್ಕದ್ದು:

ಮತ್ತು ಪರಂತು, ಯಾವುದೇ ಕೋರ್ಸಿನಲ್ಲಿ ಹತ್ತಕ್ಕಿಂತ ಕಡಿಮೆ ಸೀಟುಗಳು ಇರುವಲ್ಲಿ, ಸ್ನಾತಕೋತ್ತರ, ಇಂಥ ಕೋರ್ಸುಗಳನ್ನು ಒಟ್ಟಿಗೆ ಒಂದುಗೂಡಿಸುವ ಮೂಲಕ ಮೀಸಲಿಡತಕ್ಕದ್ದು ಮತ್ತು ಯಾವುದೇ ಕೋರ್ಸಿನಲ್ಲಿ ಮೂರು ಸೀಟುಗಳಿಗಿಂತ ಕಡಿಮೆ ಇರುವಲ್ಲಿ, ಅವುಗಳನ್ನು ಸುತ್ತು ಸರದಿಯಲ್ಲಿ ಮೀಸಲಿಡತಕ್ಕದ್ದು.

**10. ರಾಷ್ಟ್ರೀಯ ಅಧಿಮಾನ್ಯತೆ.–** ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಆದಷ್ಟು ಬೇಗನೆ ಸಂಬಂಧಪಟ್ಟ ಶಾಸನಾತ್ಮಕ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳಿಂದ ಅಧಿಮಾನ್ಯತೆಯನ್ನು ಕೋರತಕ್ಕದ್ದು. ಖಾಸಗಿ ವಿಶ್ವವಿದ್ಯಾಲಯಗಳು ನಡೆಸುವ ಎಲ್ಲಾ ಕೋರ್ಸುಗಳು ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಯ ವಿನಿಯಮಗಳಿಗನುಸಾರವಾಗಿರತಕ್ಕದ್ದು.

**11. ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು.–** ಪ್ರಾಯೋಜಕ ಸಂಸ್ಥೆಯು ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದಂತೆ ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು. ಇವುಗಳಲ್ಲಿ ಪ್ರತಿಯೊಂದನ್ನು ಈ ಅಧಿನಿಯಮದಲ್ಲಿ ಉಪಬಂಧಿಸಲಾದಂತೆ ಪ್ರಾಯೋಜಕ ಸಂಸ್ಥೆಯು ಚಲಾಯಿಸಬಹುದು, ಎಂದರೆ:–

(i) ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಪುನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(ii) ವಿಶ್ವವಿದ್ಯಾಲಯದ ಪ್ರಥಮ ಪ್ರಬಂಧಕ ಮಂಡಳಿಯನ್ನು ರಚಿಸುವುದು;

(iii) ಪ್ರಬಂಧಕ ಮಂಡಳಿಯ ಅಧ್ಯಕ್ಷರನ್ನು ನಾಮನಿರ್ದೇಶಿಸುವುದು;

(iv) ಪ್ರಬಂಧಕ ಮಂಡಳಿಯ ಸದಸ್ಯರಾಗಿ ಮೂವರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(v) ಕಾರ್ಯನಿರ್ವಹಣಾ ಪರಿಷತ್ತಿನ ಸದಸ್ಯರಾಗಿ ಇಬ್ಬರು ವ್ಯಕ್ತಿಗಳನ್ನು ನಾಮ ನಿರ್ದೇಶಿಸುವುದು;

(vi) ವಿಶ್ವವಿದ್ಯಾಲಯದ ದತ್ತಿ ನಿಧಿಗೆ ದೇಣಿಗೆ ನೀಡಲು ನಿಧಿ ಮೂಲಗಳನ್ನು ನಿರ್ಧರಿಸುವುದು;

(vii) ವಿಶ್ವವಿದ್ಯಾಲಯದ ಹಣದ ವಿನಿಯೋಗ ಮತ್ತು ವೆಚ್ಚ ಮಾಡುವುದನ್ನು ನಿರ್ಧರಿಸುವುದು;

(viii) ಪ್ರಬಂಧಕ ಮಂಡಳಿಯ ಸಭೆಯಲ್ಲಿಯ ಯಾವುವೇ ವಿವಾದಗಳನ್ನು ಈ ಅಧಿನಿಯಮದಲ್ಲಿ ಉಪಬಂಧಿಸಿರುವ ವಿಧಾನದಲ್ಲಿ ಬಗೆಹರಿಸುವುದು;

## ಅಧ್ಯಾಯ – III

## ವಿಶ್ವವಿದ್ಯಾಲಯದ ಅಧಿಕಾರಿಗಳು

**12. ವಿಶ್ವವಿದ್ಯಾಲಯದ ಅಧಿಕಾರಿಗಳು.–** ಈ ಮುಂದಿನವರು ವಿಶ್ವವಿದ್ಯಾಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:–

(i) ಸಂದರ್ಶಕರು;

(ii) ಸಹ–ಸಂದರ್ಶಕರು;

(iii) ಕುಲಾಧಿಪತಿಗಳು;

(iv) ಕುಲಪತಿಗಳು;

(v) ಸಹ–ಕುಲಪತಿಗಳು;

(vi) ಕುಲಸಚಿವರು;

(vii) ಹಣಕಾಸು ಅಧಿಕಾರಿ; ಮತ್ತು

(viii) ಪರಿನಿಯಮಗಳ ಮೂಲಕ ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಘೋಷಿಸಬಹುದಾದ ಅಂಥ ಇತರ ಅಧಿಕಾರಿಗಳು.

**13. ಸಂದರ್ಶಕರು.–** (1) ಕರ್ನಾಟಕದ ಘನತೆವೆತ್ತ ರಾಜ್ಯಪಾಲರು ವಿಶ್ವವಿದ್ಯಾಲಯದ ಸಂದರ್ಶಕರಾಗಿರತಕ್ಕದ್ದು ಮತ್ತು ಸಂದರ್ಶಕರು ವಿಶ್ವವಿದ್ಯಾಲಯದ ಕಾರ್ಯನಿರ್ವಹಣೆಯ ಸುಧಾರಣೆಗಾಗಿ ಸಲಹೆಗಳನ್ನು ನೀಡಬಹುದು.

(2) ಸಂದರ್ಶಕರು, ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಸಂದರ್ಶಕರು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ವ್ಯವಹಾರಗಳಿಗೆ ಸಂಬಂಧಿಸಿದಂತೆ, ಯಾವುದೇ ಪತ್ರ ಅಥವಾ ಮಾಹಿತಿಯನ್ನು ತರಿಸಿಕೊಳ್ಳುವುದು;

(ii) ಸಂದರ್ಶಕರು, ಅವರು ಸ್ವೀಕರಿಸಿದ ಮಾಹಿತಿಯ ಆಧಾರದ ಮೇಲೆ ವಿಶ್ವವಿದ್ಯಾಲಯಗಳ ಯಾವುದೇ ಪ್ರಾಧಿಕಾರವು ಮಾಡಿದ ಯಾವುದೇ ಆದೇಶ, ನಡೆಸಿದ ವ್ಯವಹರಣೆಗಳು ಅಥವಾ ಕೈಗೊಂಡ ತೀರ್ಮಾನಗಳು, ಈ ಅಧಿನಿಯಮಕ್ಕೆ, ವಿನಿಯಮಗಳಿಗೆ ಅಥವಾ ನಿಯಮಗಳಿಗೆ ಪೂರಕವಾಗಿಲ್ಲವೆಂದು ಮನಗಂಡರೆ ಅವರು ವಿಶ್ವವಿದ್ಯಾಲಯದ ಹಿತಾಸಕ್ತಿಯಿಂದ ತಾವು ಸೂಕ್ತವೆಂದು ಭಾವಿಸಬಹುದಾದ ಅಂಥ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಹಾಗೆ ಹೊರಡಿಸಿದ ನಿರ್ದೇಶನಗಳನ್ನು ಸಂಬಂಧಪಟ್ಟವರೆಲ್ಲರೂ ಪಾಲಿಸತಕ್ಕದ್ದು.

**14. ಸಹ-ಸಂದರ್ಶಕರು.–** (1) ಕರ್ನಾಟಕ ಸರ್ಕಾರದ ಮಾನ್ಯ ಉನ್ನತ ಶಿಕ್ಷಣ ಸಚಿವರು ವಿಶ್ವವಿದ್ಯಾಲಯದ ಸಹ-ಸಂದರ್ಶಕರಾಗಿರತಕ್ಕದ್ದು.

(2) ಸಂದರ್ಶಕರ ಅನುಪಸ್ಥಿತಿಯಲ್ಲಿ ಸಹ-ಸಂದರ್ಶಕರು ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**15. ಕುಲಾಧಿಪತಿಗಳು.–** (1) ಕುಲಾಧಿಪತಿಯವರನ್ನು ಪ್ರಾಯೋಜಕ ಸಂಸ್ಥೆಯು ನೇಮಿಸತಕ್ಕದ್ದು.

(2) ಪ್ರಾಯೋಜಕ ಸಂಸ್ಥೆಯ ಹಾಲಿ ಮುಖ್ಯಸ್ಥರು ಮೊದಲನೇ ಕುಲಾಧಿಪತಿಗಳಾಗಿರತಕ್ಕದ್ದು, ಅವರು ತಮ್ಮ ಜೀವನಪರ್ಯಂತ ಅಥವಾ ಅವರು ತಮ್ಮ ಪದವನ್ನು ಬಿಟ್ಟುಕೊಡುವವರೆಗೆ ಪದಧಾರಣ ಮಾಡಿರತಕ್ಕದ್ದು.

(3) ತದನಂತರದ ಕುಲಾಧಿಪತಿಗಳು, ಅಂಥ ನೇಮಕಾತಿಯನ್ನು ಪರಿಗಣಿಸುವ ಸಂದರ್ಭದಲ್ಲಿ ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ, ಪ್ರಾಯೋಜಕ ಸಂಸ್ಥೆಯ ಸದಸ್ಯನಾಗಿರತಕ್ಕದ್ದು ಅಥವಾ ಶಿಕ್ಷಣ, ವಿಜ್ಞಾನ, ಸಂಸ್ಕೃತಿ ಅಥವಾ ಸಾರ್ವಜನಿಕ ಜೀವನ ಕ್ಷೇತ್ರಗಳಲ್ಲಿ ರಾಷ್ಟ್ರೀಯ ಮಟ್ಟದ ಛಾಪನ್ನು ಪಡೆದಿರುವ ಅಂಥ ಇತರ ವ್ಯಕ್ತಿಯಾಗಿರತಕ್ಕದ್ದು.

(4) ಹಾಗೆ ನೇಮಕಗೊಂಡ ತದನಂತರದ ಕುಲಾಧಿಪತಿಗಳು ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ಪದಧಾರಣ ಮಾಡತಕ್ಕದ್ದು.

(5) ಕುಲಾಧಿಪತಿಗಳು ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳ ಅಡಿಯಲ್ಲಿ ಅವರಿಗೆ ಪ್ರದಾನ ಮಾಡಬಹುದಾದ ಅಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು, ಅವುಗಳಲ್ಲಿ ಈ ಮುಂದಿನ ಅಧಿಕಾರಗಳು ಒಳಗೊಂಡಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುವುದು;

(ii) ಸಂದರ್ಶಕರ ಮತ್ತು ಸಹ-ಸಂದರ್ಶಕರಿಬ್ಬರ ಗೈರುಹಾಜರಿಯಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಘಟಿಕೋತ್ಸವಗಳಲ್ಲಿ ಅಧ್ಯಕ್ಷತೆಯನ್ನು ವಹಿಸುವುದು;

(iii) ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವುದು;

(iv) ಈ ಅಧಿನಿಯಮ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಅನುಸಾರವಾಗಿ ಕುಲಪತಿಗಳನ್ನು ನೇಮಿಸುವುದು ಅಥವಾ ಪುನರ್ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(v) ಈ ಅಧಿನಿಯಮದ 16ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ನಾಮನಿರ್ದೇಶಕ ಸಮಿತಿಯ ಸದಸ್ಯರಾಗಿ ಒಬ್ಬ ವ್ಯಕ್ತಿಯನ್ನು ನಾಮನಿರ್ದೇಶನ ಮಾಡುವುದು;

(vi) ಸಹಕುಲಪತಿಗಳ, ಡೀನ್‌ರವರ, ಕುಲಸಚಿವರ ಹಾಗೂ ಹಣಕಾಸು ಅಧಿಕಾರಿಗಳ ನೇಮಕಾತಿಯನ್ನು ಪೂರ್ವಾನುಮೋದಿಸುವುದು;

(vii) ಪ್ರಬಂಧಕ ಮಂಡಳಿಯ ಸದಸ್ಯರನ್ನಾಗಿ ಇಬ್ಬರು ಶಿಕ್ಷಣ ತಜ್ಞರನ್ನು ನಾಮನಿರ್ದೇಶಿಸುವುದು;

(viii) ಮೊದಲ ಸಹ-ಕುಲಪತಿಗಳು ಮತ್ತು ಹಣಕಾಸು ಅಧಿಕಾರಿಗಳನ್ನು ನೇಮಿಸುವುದು;

(ix) ಮೊದಲ ಕಾರ್ಯನಿರ್ವಾಹಣಾ ಪರಿಷತ್ತು, ಹಣಕಾಸು ಸಮಿತಿ, ಸಂಶೋಧನಾ ಪರಿಷತ್ತು ಹಾಗೂ ಶೈಕ್ಷಣಿಕ ಪರಿಷತ್ತುಗಳನ್ನು ರಚಿಸುವುದು;

(x) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ ಕಾರ್ಯಸೂಚಿ ವಿಷಯಗಳನ್ನು ಪೂರ್ವಾನುಮೋದಿಸುವುದು;

(xi) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ (ಪ್ರಬಂಧಕ ಮಂಡಳಿಯ ಸಭೆಯಲ್ಲಿ ಉಂಟಾದ ವಿವಾದಗಳನ್ನು ಹೊರತುಪಡಿಸಿ) ವಿವಾದಗಳನ್ನು ಪರಿಹರಿಸುವುದು.

(6) ಪದಾಧಿಕಾರಿ ಅಥವಾ ಸಂಸ್ಥೆ ಮತ್ತು ವಿಶ್ವವಿದ್ಯಾಲಯದ ಯಾವುದೇ ಇತರ ಪದಾಧಿಕಾರಿ ಅಥವಾ ಸಂಸ್ಥೆಗಳ ನಡುವೆ ವಿವಾದಗಳು ಉಂಟಾದಲ್ಲಿ, ಆ ವಿವಾದವನ್ನು ಕುಲಾಧಿಪತಿಯವರ ಪರ್ಯಾಲೋಚನೆಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿವಾದದ ಸಂದರ್ಭದಲ್ಲಿ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**16. ಕುಲಪತಿಗಳು.–** (1) (2)ನೇ ಉಪಪ್ರಕರಣದ ಉಪಬಂಧಗಳಿಗೆ ಅನುಸಾರವಾಗಿ ನಾಮನಿರ್ದೇಶಕ ಸಮಿತಿಯು ಶಿಫಾರಸ್ಸು ಮಾಡಿದ ಮೂವರು ವ್ಯಕ್ತಿಗಳ ಪೈಕಿಯಿಂದ ಒಬ್ಬರನ್ನು ಮೂರು ವರ್ಷಗಳ ಅವಧಿಗಾಗಿ ಕುಲಪತಿಗಳನ್ನಾಗಿ, ಪರಿನಿಯಮಗಳಲ್ಲಿ ನಿಯಮಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರು ನೇಮಿಸತಕ್ಕದ್ದು. ಮೂರು ವರ್ಷಗಳ ಅವಧಿಯು ಮುಗಿದ ತರುವಾಯ, ಇದನ್ನು ಮೂರು ವರ್ಷಗಳ ಮತ್ತೊಂದು ಅವಧಿಗೆ ನವೀಕರಿಸಬಹುದು:

ಪರಂತು, ಕುಲಪತಿಯವರು, ತಮ್ಮ ಅವಧಿ ಮುಗಿದ ನಂತರವೂ ಹೊಸ ಕುಲಪತಿಯವರು ಸೇರಿಕೊಳ್ಳುವವರೆಗೆ ಪದದಲ್ಲಿ ಮುಂದುವರೆಯತಕ್ಕದ್ದು. ಆದಾಗ್ಯೂ ಈ ಅವಧಿಯು ಯಾವುದೇ ಸಂದರ್ಭದಲ್ಲಿ ಒಂದು ವರ್ಷವನ್ನು ಮೀರತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಹೇಳಿರುವ ನಾಮನಿರ್ದೇಶಕ ಸಮಿತಿಯಲ್ಲಿ ಈ ಮುಂದಿನ ವ್ಯಕ್ತಿಗಳು ಇರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು ನಾಮನಿರ್ದೇಶಿಸಿದ ಒಬ್ಬ ವ್ಯಕ್ತಿ;

(ii) ಪ್ರಬಂಧಕ ಮಂಡಳಿಯ ಇಬ್ಬರು ನಾಮ ನಿರ್ದೇಶಿತರು, ಇವರಲ್ಲಿ ಒಬ್ಬರನ್ನು ಪ್ರಬಂಧಕ ಮಂಡಳಿಯು ಸಮಿತಿಯ ಸಂಚಾಲಕರೆಂದು ನಾಮನಿರ್ದೇಶಿಸತಕ್ಕದ್ದು.

(3) ಶೋಧನಾ ಸಮಿತಿಯು, ಅರ್ಹತೆಯ ಆಧಾರದ ಮೇಲೆ ಕುಲಪತಿಯ ಹುದ್ದೆಗೆ ಸೂಕ್ತವಾದ ಮೂವರು ವ್ಯಕ್ತಿಗಳ ಹೆಸರನ್ನು ಶಿಫಾರಸ್ಸು ಮಾಡತಕ್ಕದ್ದು ಮತ್ತು ಅದನ್ನು ಪ್ರತಿಯೊಬ್ಬ ವ್ಯಕ್ತಿಯ ವಿದ್ಯಾರ್ಹತೆ ಮತ್ತಿತರ ವಿಶಿಷ್ಟ ಪ್ರಶಸ್ತಿಗಳನ್ನು ತಿಳಿಸುವ ಒಂದು ಸಂಕ್ಷಿಪ್ತ ವರದಿಯೊಂದಿಗೆ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು.

(4) ಕುಲಪತಿಯವರು ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಹಣಾ ಮತ್ತು ಶೈಕ್ಷಣಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣವನ್ನು ಚಲಾಯಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯದ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೊಳಿಸತಕ್ಕದ್ದು:

ಪರಂತು, ಶಿಕ್ಷಕರ ನೇಮಕಾತಿಯನ್ನು ಹೊರತುಪಡಿಸಿ, ಕೂಡಲೇ ಕ್ರಮವನ್ನು ಕೈಗೊಳ್ಳಬೇಕಾದ ತುರ್ತು ಸ್ವರೂಪದ ಯಾವುದೇ ಇತರ ವಿಷಯಗಳಲ್ಲಿ ಮತ್ತು ಅದನ್ನು ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ವಿಶ್ವವಿದ್ಯಾಲಯವು ಇದಕ್ಕಾಗಿ ಅಧಿಕೃತಗೊಳಿಸಿದ್ದ ಯಾವೊಬ್ಬ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ಇತರ ಸಂಸ್ಥೆಯು ಕೂಡಲೇ ಕ್ರಮಕೈಗೊಳ್ಳುವುದು ಸಾಧ್ಯವಿರದಿರುವಾಗ ಕುಲಪತಿಯವರು, ತಾನು ಸೂಕ್ತವೆಂದು ಭಾವಿಸಬಹುದಾದಂತಹ ಕ್ರಮವನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆದು ಕೈಗೊಳ್ಳತಕ್ಕದ್ದು.

(5) ಕುಲಪತಿಯವರು ಪರಿನಿಯಮಗಳು ಅಥವಾ ನಿಯಮಗಳಲ್ಲಿ ಹೇಳಲಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು:

ಪರಂತು, ಕುಲಪತಿಗಳ ಅಭಿಪ್ರಾಯದಲ್ಲಿ, ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಯಾವುದೇ ನಿರ್ಣಯವು, ಈ ಅಧಿನಿಯಮ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳು, ವಿನಿಯಮಗಳು ಅಥವಾ ನಿಯಮಗಳ ಮೂಲಕ ಪ್ರದತ್ತವಾದ ಅಧಿಕಾರದ ಹೊರಗಿದ್ದರೆ ಅಥವಾ ವಿಶ್ವವಿದ್ಯಾಲಯದ ಹಿತಾಸಕ್ತಿಗೆ ಪ್ರತಿಕೂಲವಾಗಬಹುದಾಗಿದ್ದರೆ, ಅದರ ನಿರ್ಣಯದ ದಿನಾಂಕದಿಂದ ಹದಿನೈದು ದಿನಗಳ ಒಳಗೆ ತನ್ನ ನಿರ್ಣಯವನ್ನು ಪರಿಷ್ಕರಿಸಲು ಸಂಬಂಧಪಟ್ಟ ಪ್ರಾಧಿಕಾರವನ್ನು ಆತನು ಕೋರತಕ್ಕದ್ದು ಮತ್ತು ಪ್ರಾಧಿಕಾರವು ಅಂಥ ನಿರ್ಣಯವನ್ನು ಸಂಪೂರ್ಣವಾಗಿ ಅಥವಾ ಭಾಗಶ:ವಾಗಿ ಪರಿಷ್ಕರಿಸಲು ನಿರಾಕರಿಸಿದ ಸಂದರ್ಭದಲ್ಲಿ ಅಥವಾ ಹದಿನೈದು ದಿನಗಳೊಳಗೆ ಯಾವುದೇ ನಿರ್ಣಯವನ್ನು ತೆಗೆದುಕೊಳ್ಳಲು ವಿಫಲವಾದಲ್ಲಿ, ನಂತರ ಅಂಥ ವಿಷಯವನ್ನು ಕುಲಾಧಿಪತಿಗಳಿಗೆ ಕಳುಹಿಸತಕ್ಕದ್ದು ಮತ್ತು ಈ ಬಗ್ಗೆ ಇವರ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

(6) ಕುಲಪತಿಯವರ ಸೇವೆಗಳನ್ನು, ಪ್ರಬಂಧಕ ಮಂಡಳಿಯ ಅನುಮೋದನೆಯೊಂದಿಗೆ ಮತ್ತು ಸಹಜ ನ್ಯಾಯದ ತತ್ವಗಳನ್ನು ಅನುಸರಿಸಿದ ನಂತರ ಹಾಗೂ ಶಿಸ್ತಿನ ಆಧಾರದ ಮೇಲೆ ಅಂತ್ಯಗೊಳಿಸುವ ಸಂದರ್ಭವೂ ಸೇರಿದಂತೆ, ಪ್ರಕರಣದ ಬಗ್ಗೆ ಕುಲಪತಿಯು ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡಿದ ತರುವಾಯ, ಕುಲಾಧಿಪತಿಯವರು ಅಂತ್ಯಗೊಳಿಸಬಹುದು.

(7) ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಸಂದರ್ಶಕರು, ಸಹ-ಸಂದರ್ಶಕರು ಕುಲಾಧಿಪತಿಯವರು ಮತ್ತು ಸಹ-ಕುಲಾಧಿಪತಿಯವರು ಇವರುಗಳ ಗೈರು ಹಾಜರಿಯ ಸಂದರ್ಭದಲ್ಲಿ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**17. ಸಹ–ಕುಲಪತಿಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಮೂರು ಜನರನ್ನು ಮೀರದಂತೆ ಸಹ–ಕುಲಪತಿಗಳನ್ನು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**18. ವ್ಯಾಸಂಗ ವಿಭಾಗಗಳ ಡೀನ್‌ಗಳು.–** ಕುಲಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವ್ಯಾಸಂಗ ವಿಭಾಗಗಳ ಡೀನ್‌ಗಳನ್ನು ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**19. ಕುಲಸಚಿವರು.–** (1) ಕುಲಾಧಿಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಸಚಿವರನ್ನು ನೇಮಕ ಮಾಡತಕ್ಕದ್ದು.

(2) ಪರಿನಿಯಮಗಳಲ್ಲಿ ಪರಿಭಾಷಿಸಿರುವಂಥ ಎಲ್ಲಾ ಕರಾರುಗಳನ್ನು ವಿಶ್ವವಿದ್ಯಾಲಯದ ಪರವಾಗಿ ಕುಲಸಚಿವರು ಮಾಡಿಕೊಳ್ಳತಕ್ಕದ್ದು ಮತ್ತು ಅದಕ್ಕೆ ಸಹಿ ಹಾಕತಕ್ಕದ್ದು.

(3) ಕುಲಸಚಿವರು ವಿಶ್ವವಿದ್ಯಾಲಯದ ಪರವಾಗಿ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಪರಿನಿಯಮಗಳಿಂದ ಪ್ರದತ್ತಗೊಳಿಸಬಹುದಾದಂಥ ಅಥವಾ ಕುಲಾಧಿಪತಿಯವರು ಮತ್ತು ಕುಲಪತಿಯವರು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು ವಿಶ್ವವಿದ್ಯಾಲಯದ ದಾಖಲೆಗಳು ಮತ್ತು ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು, ಕುಲಪತಿಯವರು ಅಥವಾ ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಅಂಥ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿತಕ್ಕದ್ದು.

**20. ಹಣಕಾಸು ಅಧಿಕಾರಿ.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು, ಪರಿನಿಯಮಗಳ ಮೂಲಕ ಪ್ರದತ್ತಗೊಳಿಸಬಹುದಾದ ಅಂಥ ವಿಧಾನದಲ್ಲಿ ಹಣಕಾಸು ಅಧಿಕಾರಿಯನ್ನು ನೇಮಕ ಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**21. ಇತರ ಅಧಿಕಾರಿಗಳು.–** ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ ನೇಮಕಾತಿಯ ವಿಧಾನ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಕರ್ತವ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ – IV

## ವಿಶ್ವವಿದ್ಯಾಲಯದ ಪ್ರಾಧಿಕಾರಗಳು

**22. ವಿಶ್ವವಿದ್ಯಾಲಯದ ಪ್ರಾಧಿಕಾರಗಳು.–** ಈ ಮುಂದಿನವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:–

(i) ಪ್ರಬಂಧಕ ಮಂಡಳಿ;

(ii) ವ್ಯವಸ್ಥಾಪನಾ ಮಂಡಳಿ;

(iii) ಶೈಕ್ಷಣಿಕ ಪರಿಷತ್ತು;

(iv) ಸಂಶೋಧನಾ ಪರಿಷತ್ತು;

(v) ಹಣಕಾಸು ಪರಿಷತ್ತು; ಮತ್ತು

(vi) ವಿಶ್ವವಿದ್ಯಾಲಯದ ಪ್ರಾಧಿಕಾರಗಳೆಂದು ಪರಿನಿಯಮಗಳ ಮೂಲಕ ಘೋಷಿಸಬಹುದಾದ ಅಂಥ ಇತರ ಪ್ರಾಧಿಕಾರಗಳು.

**23. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು.–** (1) ಪ್ರಬಂಧಕ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು – ಅಧ್ಯಕ್ಷರು;

(ii) ಕುಲಪತಿಯವರು – ಸದಸ್ಯರು;

(iii) ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(iv) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(v) ರಾಜ್ಯ ಸರ್ಕಾರವು ನಾಮ ನಿರ್ದೇಶನ ಮಾಡಿದ ಆಡಳಿತವನ್ನು ಒಳಗೊಂಡಂತೆ ವ್ಯವಸ್ಥಾಪನೆ, ಹಣಕಾಸು ಅಥವಾ ಯಾವುದೇ ಇತರ ವಿಶೇಷ ಕ್ಷೇತ್ರದಲ್ಲಿನ ಒಬ್ಬರು ತಜ್ಞರು;

(vi) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಇಬ್ಬರು ವ್ಯಕ್ತಿಗಳು ಅವರ ಪೈಕಿ ಒಬ್ಬರು ಮಹಿಳೆಯಾಗಿರತಕ್ಕದ್ದು;

(vii) ಸಹ ಕುಲಪತಿಯವರು ಮತದಾನದ ಹಕ್ಕಿಲ್ಲದ ಸದಸ್ಯರಾಗಿರತಕ್ಕದ್ದು;

(viii) ವಿಶ್ವವಿದ್ಯಾಲಯ ಅನುದಾನ ಆಯೋಗದ ನಾಮನಿರ್ದೇಶಿತ ಒಬ್ಬ ಸುಪ್ರಸಿದ್ಧ ಶಿಕ್ಷಣ ತಜ್ಞರು.

(2) ಕುಲಸಚಿವರು ಪ್ರಬಂಧಕ ಮಂಡಳಿಯ ಮತ ದಾನದ ಹಕ್ಕಿರದ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ಪ್ರಬಂಧಕ ಮಂಡಳಿಯ ಸದಸ್ಯರ ಪದಾವಧಿ, ಸರ್ಕಾರದಿಂದ ನಾಮನಿರ್ದೇಶಿತರಾದ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ನೇಮಕಾತಿ, ನವೀಕರಣ ಮತ್ತು ತೆಗೆದುಹಾಕುವುದು ಮುಂತಾದವುಗಳು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಾಧಿಪತಿಯವರು ಯಾವಾಗಲೂ ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರ ಗೈರುಹಾಜರಿಯಲ್ಲಿ ಕುಲಾಧಿಪತಿಯವರಿಂದ ನಾಮನಿರ್ದೇಶಿತರಾದ ಯಾರಾದರೂ ಒಬ್ಬರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು. ಅಂಥ ಸಭೆಯ ಅಧ್ಯಕ್ಷತೆಯನ್ನು ವಹಿಸುವುದಕ್ಕೆ ಕುಲಾಧಿಪತಿಯವರು ಯಾವೊಬ್ಬ ವ್ಯಕ್ತಿಯನ್ನೂ ನಾಮನಿರ್ದೇಶನ ಮಾಡಿರದಿದ್ದಲ್ಲಿ, ಸಭೆಯಲ್ಲಿ ಹಾಜರಿರುವ ಸದಸ್ಯರು ಸರಳ ಬಹುಮತದ ಮೂಲಕ ಅವರುಗಳ ಪೈಕಿಯಿಂದಲೇ ಆ ಸಭೆಯ ಅಧ್ಯಕ್ಷನನ್ನು ಚುನಾಯಿಸತಕ್ಕದ್ದು.

(5) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಿಗೆ, ಅಂಥ ಸಭೆಯಲ್ಲಿ ಹಾಜರಿದ್ದು ಮತ ನೀಡುವ ಮೂರು ಜನ ಸದಸ್ಯರು ಗಣಪೂರ್ತಿ (ಕೋರಂ) ಆಗಿರತಕ್ಕದ್ದು:

ಪರಂತು, ಪ್ರಬಂಧಕ ಮಂಡಳಿಯ ಯಾವುದೇ ಸಭೆಯ ಕೋರಂ ಪೂರ್ಣವಾಗಬೇಕಾದರೆ ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಿರುವುದು ಮತ್ತು ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಾಗದೇ ಇದ್ದಾಗ ಕುಲಪತಿಯವರು ಹಾಜರಿರುವುದು ಯಾವಾಗಲೂ ಅವಶ್ಯವಾಗಿರತಕ್ಕದ್ದು.

(6) ಪ್ರಬಂಧಕ ಮಂಡಳಿಯು ವಿಶ್ವವಿದ್ಯಾಲಯದ ಪ್ರಧಾನ ಪ್ರಬಂಧಕ ಸಂಸ್ಥೆಯಾಗಿರತಕ್ಕದ್ದು ಮತ್ತು ಅದು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಕಗೊಳಿಸುವುದು;

(ii) ವಿಶ್ವವಿದ್ಯಾಲಯವು ಅನುಸರಿಸಬೇಕಾದ ಕಾರ್ಯನೀತಿಗಳನ್ನು ರಚಿಸುವುದು;

(iii) ಈ ಅಧಿನಿಯಮದ ಅಥವಾ ಪರಿನಿಯಮಗಳ ಅಥವಾ ನಿಯಮಗಳ ಉಪಬಂಧಗಳಿಗೆ ಅನುಗುಣವಾಗಿ ಇರದ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ತೀರ್ಮಾನಗಳನ್ನು ಪುನರೀಕ್ಷಿಸುವುದು;

(iv) ವಿಶ್ವವಿದ್ಯಾಲಯದ ಆಯವ್ಯಯ ಮತ್ತು ವಾರ್ಷಿಕ ವರದಿಗಳನ್ನು ಅನುಮೋದಿಸುವುದು;

(v) ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸುವುದು ಅಥವಾ ಈಗಾಗಲೇ ಇರುವ ಪರಿನಿಯಮಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವುದು ಅಥವಾ ನಿರಸನಗೊಳಿಸುವುದು;

(vi) ವಿಶ್ವವಿದ್ಯಾಲಯವನ್ನು ಸ್ವಯಂಸಮಾಪನಗೊಳಿಸುವ ನಿರ್ಧಾರವನ್ನು ತೆಗೆದುಕೊಳ್ಳುವುದು;

(vii) ಸರ್ಕಾರಕ್ಕೆ ಸಲ್ಲಿಸುವ ಪ್ರಸ್ತಾವಗಳನ್ನು ಅನುಮೋದಿಸುವುದು;

(viii) ಶುಲ್ಕ ನಿಯಂತ್ರಣ ಸಮಿತಿಗೆ ಮೂವರು ಸದಸ್ಯರನ್ನು ನಾಮನಿರ್ದೇಶನ ಮಾಡುವುದು;

(ix) ವಿಶ್ವವಿದ್ಯಾಲಯದ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕೆ ಅಪೇಕ್ಷಣೀಯವೆಂದು ಕಂಡುಬರುವಂಥ ತೀರ್ಮಾನಗಳನ್ನು ಮತ್ತು ಕ್ರಮಗಳನ್ನು ಕೈಗೊಳ್ಳುವುದು.

(7) ಪ್ರಬಂಧಕ ಮಂಡಳಿಯು ಒಂದು ವರ್ಷದಲ್ಲಿ ಕನಿಷ್ಠ ಮೂರು ಸಲ ಸಭೆ ಸೇರತಕ್ಕದ್ದು.

(8) ಪ್ರಬಂಧಕ ಮಂಡಳಿಯು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಸಮಯ ಮತ್ತು ಸ್ಥಳದಲ್ಲಿ ಸಭೆ ಸೇರತಕ್ಕದ್ದು.

**24. ವ್ಯವಸ್ಥಾಪನಾ ಮಂಡಳಿ.**- (1) ವ್ಯವಸ್ಥಾಪನಾ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಗಳು;

(ii) ಸಹ-ಕುಲಪತಿಗಳು;

(iii) ಕುಲಸಚಿವರು;

(iv) ಪ್ರಾಯೋಜಕ ಸಂಸ್ಥೆಯ ಇಬ್ಬರು ನಾಮನಿರ್ದೇಶಿತರು;

(v) ಕುಲಪತಿಗಳು ನಾಮನಿರ್ದೇಶಿಸಬಹುದಾದ ವಿದ್ಯಾಲಯಗಳ ಇಬ್ಬರು ಡೀನ್‌ಗಳು;

(2) ಕುಲಪತಿಯವರು ವ್ಯವಸ್ಥಾಪನಾ ಮಂಡಳಿಯ ಅಧ್ಯಕ್ಷರಾಗಿರತಕ್ಕದ್ದು ಮತ್ತು ಕುಲಸಚಿವರು ವ್ಯವಸ್ಥಾಪನಾ ಮಂಡಳಿಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ವ್ಯವಸ್ಥಾಪನಾ ಮಂಡಳಿಯು ವಿಶ್ವವಿದ್ಯಾಲಯದ ಕಾರ್ಯನಿರ್ವಹಣಾ ಮಂಡಳಿಯಾಗಿರತಕ್ಕದ್ದು. ವ್ಯವಸ್ಥಾಪನಾ ಮಂಡಳಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ವ್ಯವಸ್ಥಾಪನಾ ಮಂಡಳಿಯ ಎಲ್ಲಾ ಸಭೆಗಳಲ್ಲಿ ಯಾವಾಗಲೂ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು ಹಾಗೂ ಕುಲಪತಿಯವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೇ ಇದ್ದ ಸಂದರ್ಭದಲ್ಲಿ ಸಭೆಯಲ್ಲಿ ಹಾಜರಿರುವ ಸದಸ್ಯರು ಚುನಾಯಿಸಿದ ಯಾವೊಬ್ಬ ಇತರ ಸದಸ್ಯರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ವ್ಯವಸ್ಥಾಪನಾ ಮಂಡಳಿಯ ಸಭೆಯಲ್ಲಿ ಯಾವುದೇ ವಿಷಯವನ್ನು ಕುರಿತು ವಿವಾದ ಉಂಟಾದಲ್ಲಿ ಸದರಿ ವಿಷಯವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯದ ಬಗ್ಗೆ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**25. ಶೈಕ್ಷಣಿಕ ಪರಿಷತ್ತು.**–(1) ಶೈಕ್ಷಣಿಕ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹ–ಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಕಾರ್ಯದರ್ಶಿಗಳು

(iv) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಶೈಕ್ಷಣಿಕ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಶೈಕ್ಷಣಿಕ ಸಂಸ್ಥೆಯಾಗಿರತಕ್ಕದ್ದು ಮತ್ತು ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಹಾಗೂ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**26. ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು.**– (1) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಸಂಶೋಧನಾ ಮತ್ತು ಅನ್ವೇಷಣಾ ಸಮಿತಿಯಾಗಿರತಕ್ಕದ್ದು ಹಾಗೂ ಸಂಶೋಧನಾ ಕ್ಷೇತ್ರದ ಆದ್ಯತೆಯೂ ಒಳಗೊಂಡಂತೆ, ವಿಶ್ವವಿದ್ಯಾಲಯವು ಕೈಗೊಳ್ಳಬೇಕಾದ ಸಂಶೋಧನೆ ಮತ್ತು ಅನ್ವೇಷಣೆಯ ಬಗ್ಗೆ ಒಂದು ವ್ಯಾಪಕವಾದ ಪರಿಪೂರ್ಣ ಭವಿಷ್ಯದ್ ದೃಷ್ಟಿಯನ್ನು ಒದಗಿಸತಕ್ಕದ್ದು. ಈ ಪರಿಷತ್ತು, ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಮತ್ತು ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಸಂಶೋಧನಾ ಮತ್ತು ಅನ್ವೇಷಣಾ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹ–ಕುಲಪತಿಯವರು – ಸದಸ್ಯರು

(iii) ಸಂಶೋಧನೆಯ ಡೀನ್ ಇವರು – ಕಾರ್ಯದರ್ಶಿ

(iv) ಅನ್ವೇಷಣಾ ವಿಭಾಗದ ಮುಖ್ಯಸ್ಥರು – ಸದಸ್ಯರು

(v) ಎಲ್ಲಾ ವ್ಯಾಸಂಗ ವಿಭಾಗಗಳ ಡೀನ್‌ಗಳು – ಸದಸ್ಯರು ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

**27. ಹಣಕಾಸು ಸಮಿತಿ.**– (1) ಹಣಕಾಸು ಸಮಿತಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು ಅಥವಾ ಅವರ ನಾಮನಿರ್ದೇಶಿತರು – ಅಧ್ಯಕ್ಷರು

(ii) ಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಸದಸ್ಯರು

(iv) ಹಣಕಾಸು ಅಧಿಕಾರಿ – ಕಾರ್ಯದರ್ಶಿ

(v) ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು – ಸದಸ್ಯರು; ಮತ್ತು

(vi) ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಹಣಕಾಸು ಸಮಿತಿಯು ಹಣಕಾಸಿನ ವಿಷಯಗಳನ್ನು ಕೈಗೊಳ್ಳುವ ವಿಶ್ವವಿದ್ಯಾಲಯದ ಪ್ರಧಾನ ಹಣಕಾಸು ಸಂಸ್ಥೆಯಾಗಿರತಕ್ಕದ್ದು ಹಾಗೂ ಅದು ಈ ಅಧಿನಿಯಮದ, ನಿಯಮಗಳ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಹಣಕಾಸು ವಿಷಯಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**28. ಇತರ ಪ್ರಾಧಿಕಾರಗಳು.**– ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ರಚನೆ, ಅಧಿಕಾರಗಳು ಹಾಗೂ ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

**29. ಒಂದು ಪ್ರಾಧಿಕಾರದ ಅಥವಾ ಸಂಸ್ಥೆಯ ಸದಸ್ಯತ್ವಕ್ಕೆ ಅನರ್ಹತೆ.**– ವಿಶ್ವವಿದ್ಯಾಲಯದ ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಒಬ್ಬ ವ್ಯಕ್ತಿಯು,–

(ಎ) ಅಸ್ವಸ್ಥ ಚಿತ್ತನಾಗಿದ್ದು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿಸಲ್ಪಟ್ಟಿದ್ದರೆ;

(ಬಿ) ಅವಿಮುಕ್ತ ದಿವಾಳಿಯಾಗಿದ್ದರೆ;

(ಸಿ) ನೈತಿಕ ಅಧಃಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದರೆ;

(ಡಿ) ಖಾಸಗಿ ಬೋಧನಾ ತರಗತಿಗಳನ್ನು ನಡೆಸುತ್ತಿದ್ದರೆ ಅಥವಾ ಸ್ವತಃ ನಿರತನಾಗಿದ್ದರೆ;

(ಇ) ಯಾವುದೇ ವಿಧದಲ್ಲಿ, ಎಲ್ಲಿಯೇಯಾಗಲೀ ಯಾವುದೇ ಪರೀಕ್ಷೆಯನ್ನು ನಡೆಸುವಲ್ಲಿ ಅನುಚಿತ ಅಭ್ಯಾಸದಲ್ಲಿ ತೊಡಗಿದ್ದಕ್ಕಾಗಿ ಅಥವಾ ಉತ್ತೇಜಿಸಿದ್ದಕ್ಕಾಗಿ ದಂಡಿತನಾಗಿದ್ದರೆ;

(ಎಫ್) ಪ್ರಾಯೋಜಿತ ಸಂಸ್ಥೆಯು ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಯಾವೊಬ್ಬ ಸದಸ್ಯನು ಆ ಪದವನ್ನು ಹೊಂದಿರುವುದಕ್ಕೆ ಅರ್ಹನಲ್ಲನೆಂದು ಲಿಖಿತದಲ್ಲಿ ಅಭಿಪ್ರಾಯ ನೀಡಿದಾಗಲೆಲ್ಲಾ,

–ಸದಸ್ಯನಾಗಿರುವುದಕ್ಕೆ ಅನರ್ಹನಾಗತಕ್ಕದ್ದು.

**30. ಖಾಲಿಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ.**– ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಕಾರ್ಯ ಅಥವಾ ವ್ಯವಹರಣೆಗಳು ಕೇವಲ ಅದರಲ್ಲಿ ಯಾವುದೇ ಖಾಲಿಸ್ಥಾನ ಇದೆ ಎಂಬ ಕಾರಣದಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣದಿಂದ ಮಾತ್ರವೇ ಅಸಿಂಧುವಾಗತಕ್ಕದ್ದಲ್ಲ.

**31. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು.**– (1) ಯಾವುವೇ ಕಾರ್ಯಸೂಚಿ ವಿಷಯಗಳನ್ನು ಕುಲಾಧಿಪತಿಯವರ ಪೂರ್ವಾನುಮೋದನೆಯನ್ನು ಪಡೆಯದೇ ಪ್ರಬಂಧಕ ಮಂಡಳಿಯ ಅಥವಾ ಕಾರ್ಯನಿರ್ವಹಣಾ ಪರಿಷತ್ತಿನ ಅಥವಾ ಯಾವುದೇ ಸಮಿತಿಯ ಸಭೆಗಳ ಕಾರ್ಯಸೂಚಿ ವಿಷಯಗಳಲ್ಲಿ ಸೇರಿಸತಕ್ಕದ್ದಲ್ಲ ಅಥವಾ ಚರ್ಚೆಗೆ ತೆಗೆದುಕೊಳ್ಳತಕ್ಕದ್ದಲ್ಲ ಅಥವಾ ತೀರ್ಮಾನಿಸತಕ್ಕದ್ದಲ್ಲ.

(2) ಈ ಅಧಿನಿಯಮದ ಯಾವುದೇ ಉಪಬಂಧಗಳನ್ನು ಪಾಲಿಸದೆ ಇರುವ ಸಂದರ್ಭದಲ್ಲಿ, ಕುಲಾಧಿಪತಿಯವರು ವಿಶ್ವವಿದ್ಯಾಲಯದ ಯಾವುದೇ ಪದಾಧಿಕಾರಿ ಅಥವಾ ಸಂಸ್ಥೆಯು ತೆಗೆದುಕೊಂಡ ಎಲ್ಲಾ ತೀರ್ಮಾನಗಳನ್ನು ವಿಪರ್ಯಯಗೊಳಿಸುವ ಮೂಲಕ ಪರಿಹಾರ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಅಧಿಕಾರವನ್ನು ಎಲ್ಲಾ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಅಂಥ ಪರಿಹಾರ ಕ್ರಮದ ಪರಿಣಾಮವಾಗಿ, ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ವಿಶ್ವವಿದ್ಯಾಲಯದ ಪದಾಧಿಕಾರಿ ಅಥವಾ ಸಂಸ್ಥೆಯು ಕೈಗೊಂಡಿದ್ದ ಎಲ್ಲಾ ಅಂಥ ಕ್ರಮಗಳು, ಮೊದಲಿನಿಂದಲೂ ಶೂನ್ಯ ಮತ್ತು ಅಕೃತ ಎಂದು ಭಾವಿಸತಕ್ಕದ್ದು ಹಾಗೂ ತತ್ಪರಿಣಾಮವಾಗಿ, ಉಪಬಂಧ ಪಾಲಿಸದೇ ಇದ್ದ ವಿಷಯ ಅಥವಾ ನಿರ್ಧಾರದ ಸಂಬಂಧದಲ್ಲಿ ಅದಕ್ಕೆ ಮೊದಲು ಇದ್ದ ವಸ್ತುಸ್ಥಿತಿಯೇ ಮುಂದುವರಿಯತಕ್ಕದ್ದು.

## ಅಧ್ಯಾಯ – V

## ಪರಿನಿಯಮಗಳು ಮತ್ತು ವಿನಿಯಮಗಳು

**32. ಪರಿನಿಯಮಗಳು.**– ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಪರಿನಿಯಮಗಳು, ವಿಶ್ವವಿದ್ಯಾಲಯಕ್ಕೆ ಮತ್ತು ಸಿಬ್ಬಂದಿಗೆ ಸಂಬಂಧಿಸಿದ ಎಲ್ಲಾ ಅಥವಾ ಯಾವುದೇ ವಿಷಯಕ್ಕೆ ಈ ಕೆಳಗಿನಂತೆ ಉಪಬಂಧ ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಕಾರ್ಯಕಲಾಪಗಳನ್ನು ನಡೆಸುವ ಮತ್ತು ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸದಿರುವ ಸಂಸ್ಥೆಗಳ ರಚನೆಯ ಕಾರ್ಯವಿಧಾನ;

(ii) ಶಾಶ್ವತ ಶಾಸನಬದ್ಧ ದತ್ತಿ ನಿಧಿ, ವಿಶ್ವವಿದ್ಯಾಲಯ ದತ್ತಿ ನಿಧಿ, ಸಾಮಾನ್ಯ ನಿಧಿ ಹಾಗೂ ಅಭಿವೃದ್ಧಿ ನಿಧಿಗಳ ನಿರ್ವಹಣೆ;

(iii) ಕುಲಪತಿಗಳು, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರ ನೇಮಕಾತಿಯ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಪ್ರಕಾರ್ಯಗಳು;

(iv) ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ, ಅಧ್ಯಾಪಕರ ಮತ್ತು ನೌಕರರ ನೇಮಕಾತಿ ವಿಧಾನ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(v) ವಿಶ್ವವಿದ್ಯಾಲಯ ಹಾಗೂ ಅದರ ಅಧಿಕಾರಿಗಳು, ವ್ಯಾಸಂಗ ವಿಭಾಗದ (ಫ್ಯಾಕಲ್ಟಿ) ಸದಸ್ಯರು, ನೌಕರರು ಹಾಗೂ ವಿದ್ಯಾರ್ಥಿಗಳ ನಡುವೆ ಉಂಟಾದ ವಿವಾದಗಳನ್ನು ಪರಿಹರಿಸುವ ಕಾರ್ಯವಿಧಾನ;

(vi) ವಿಭಾಗಗಳು ಮತ್ತು ವ್ಯಾಸಂಗ ವಿಭಾಗಗಳ (ಫ್ಯಾಕಲ್ಟಿಗಳ) ಸೃಜನೆ, ರದ್ಧತಿ ಅಥವಾ ಪುನಾರಚನೆ;

(vii) ಇತರ ವಿಶ್ವವಿದ್ಯಾಲಯಗಳು ಅಥವಾ ಉನ್ನತ ಕಲಿಕಾ ಸಂಸ್ಥೆಗಳ ಜೊತೆಯಲ್ಲಿ ಸಹಕರಿಸಬೇಕಾದ ರೀತಿ;

(viii) ಗೌರವ ಪದವಿಗಳ ನೀಡಿಕೆಯ ಕಾರ್ಯವಿಧಾನ;

(ix) ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿವೇತನ ಮಂಜೂರಾತಿಗೆ ಸಂಬಂಧಿಸಿದ ಉಪಬಂಧಗಳು;

(x) ವಿವಿಧ ವ್ಯಾಸಂಗ ಕ್ರಮಗಳಲ್ಲಿನ ಸೀಟುಗಳ ಸಂಖ್ಯೆಗೆ ಸಂಬಂಧಿಸಿದ ಕಾರ್ಯನೀತಿಗಳು ಮತ್ತು ಅಂಥ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಕಾರ್ಯವಿಧಾನ;

(xi) ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಶುಲ್ಕಕ್ಕೆ ಸಂಬಂಧಿಸಿದ ಕಾರ್ಯನೀತಿ;

(xii) ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಉಚಿತ ಶಿಕ್ಷಣ (ಫ್ರೀಶಿಪ್), ಪದಕಗಳು ಹಾಗೂ ಬಹುಮಾನಗಳನ್ನು ಪ್ರಾರಂಭಿಸುವುದು;

(xiii) ಪ್ರಬಂಧಕ ಮಂಡಳಿಯು ನಿರ್ಧರಿಸಬಹುದಾದ ಅಥವಾ ಈ ಅಧಿನಿಯಮದ ಅಡಿಯಲ್ಲಿ ಪರಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬೇಕಾದ ಅಗತ್ಯತೆಯುಳ್ಳ ಯಾವುದೇ ಇತರ ವಿಷಯಗಳು.

33. **ಪರಿನಿಯಮಗಳ ರಚನೆ ವಿಧಾನ.–** (1) ಕಾರ್ಯನಿರ್ವಹಣಾ ಪರಿಷತ್ತು ರಚಿಸಿದ ಮೊದಲ ಪರಿನಿಯಮಗಳನ್ನು ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಕಾರ್ಯನಿರ್ವಹಣಾ ಪರಿಷತ್ತು ಸಲ್ಲಿಸಿದ ಮೊದಲ ಪರಿನಿಯಮಗಳನ್ನು ಪ್ರಬಂಧಕ ಮಂಡಳಿಯು ಪರಿಗಣಿಸತಕ್ಕದ್ದು ಹಾಗೂ ತಾನು ಅವಶ್ಯವೆಂದು ಭಾವಿಸಬಹುದಾದ ಅಂಥ ಮಾರ್ಪಾಡುಗಳು, ಯಾವುದಾದರು ಇದ್ದಲ್ಲಿ, ಅವುಗಳೊಡನೆ ತನ್ನ ಅನುಮೋದನೆಯನ್ನು ನೀಡತಕ್ಕದ್ದು.

(3) ವಿಶ್ವವಿದ್ಯಾಲಯವು, ಪ್ರಬಂಧಕ ಮಂಡಳಿಯು ಅನುಮೋದಿಸಿದ ಮೊದಲ ಪರಿನಿಯಮಗಳನ್ನು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ಪ್ರಕಟಿಸತಕ್ಕದ್ದು ಮತ್ತು ತದನಂತರ ಮೊದಲ ಪರಿನಿಯಮಗಳ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

34. **ಪರಿನಿಯಮಗಳ ತಿದ್ದುಪಡಿಯ ಅಧಿಕಾರ.–** ಪ್ರಬಂಧಕ ಮಂಡಳಿಯು ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸಬಹುದು ಅಥವಾ ಪರಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ಅವನ್ನು ನಿರಸನಗೊಳಿಸಬಹುದು.

35. **ವಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ವಿನಿಯಮಗಳು ಈ ಮುಂದಿನ ವಿಷಯಗಳಿಗೆ ಉಪಬಂಧಗಳನ್ನು ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ವಿದ್ಯಾರ್ಥಿ ಪಟ್ಟಿಯಲ್ಲಿ ಅವರುಗಳ ದಾಖಲಾತಿ ಹಾಗೂ ಮುಂದುವರಿಕೆ;

(ii) ವಿಶ್ವವಿದ್ಯಾಲಯದ ಎಲ್ಲಾ ಪದವಿಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ನಿಗದಿಪಡಿಸತಕ್ಕ ವ್ಯಾಸಂಗ ಕ್ರಮಗಳು;

(iii) ಪದವಿಗಳ ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರದಾನ;

(iv) ಸಂಶೋಧನಾ ವೇತನಗಳು (ಫೆಲೋಶಿಪ್), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಪದಕಗಳು ಮತ್ತು ಬಹುಮಾನಗಳನ್ನು ನೀಡಲು ಷರತ್ತುಗಳು;

(v) ಪರೀಕ್ಷೆಗಳನ್ನು ನಡೆಸುವುದು ಹಾಗೂ ಪರೀಕ್ಷೆ ನಡೆಸುವ ಸಂಸ್ಥೆಗಳ, ಪರೀಕ್ಷಕರ, ಪರೀಕ್ಷಾ ಮೇಲ್ವಿಚಾರಕರ, ಟ್ಯಾಬುಲೇಟರ್‌ಗಳ ಮತ್ತು ಮಾಡರೇಟರ್‌ಗಳ ನೇಮಕಾತಿ ಷರತ್ತುಗಳು ಮತ್ತು ವಿಧಾನ ಹಾಗೂ ಅವರ ಕರ್ತವ್ಯಗಳು;

(vi) ವಿಶ್ವವಿದ್ಯಾಲಯದ ಪರೀಕ್ಷೆಗಳ, ಪದವಿಗಳ ಹಾಗೂ ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರವೇಶಕ್ಕೆ ವಿಧಿಸತಕ್ಕ ಶುಲ್ಕ;

(vii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನಲ್ಲಿ ವಿದ್ಯಾರ್ಥಿಗಳ ನಿವಾಸಕ್ಕಾಗಿ ಷರತ್ತುಗಳು;

(viii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಶಿಸ್ತು ಪಾಲನೆ;

(ix) ಈ ಅಧಿನಿಯಮದ ಅಡಿಯಲ್ಲಿನ ಪರಿನಿಯಮಗಳಲ್ಲಿ ಉಪಬಂಧ ಕಲ್ಪಿಸಬಹುದಾಂಥ ಇತರ ಎಲ್ಲಾ ವಿಷಯಗಳು.

**36. ವಿನಿಯಮಗಳ ರಚನೆ ವಿಧಾನ.**– ವಿನಿಯಮಗಳನ್ನು ಶೈಕ್ಷಣಿಕ ಪರಿಷತ್ತು ರಚಿಸತಕ್ಕದ್ದು ಹಾಗೂ ಕಾರ್ಯನಿರ್ವಹಣಾ ಪರಿಷತ್ತು ಅನುಮೋದಿಸತಕ್ಕದ್ದು.

**37. ವಿನಿಯಮಗಳ ತಿದ್ದುಪಡಿಗೆ ಅಧಿಕಾರ.**– ಕಾರ್ಯನಿರ್ವಹಣಾ ಪರಿಷತ್ತಿನ ಅನುಮೋದನೆಯೊಡನೆ ಶೈಕ್ಷಣಿಕ ಪರಿಷತ್ತು ಹೊಸ ವಿನಿಯಮಗಳನ್ನು ಅಥವಾ ಹೆಚ್ಚುವರಿ ವಿನಿಯಮಗಳನ್ನು ರಚಿಸಬಹುದು ಅಥವಾ ವಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ನಿರಸನಗೊಳಿಸಬಹುದು.

**38. ಶುಲ್ಕ ನಿಯಂತ್ರಣ ಸಮಿತಿ.**– (1) ಸರ್ಕಾರವು ರಚಿಸಿದ ನಿವೃತ್ತ ಸರ್ವೋಚ್ಚ ನ್ಯಾಯಾಲಯದ ಅಥವಾ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು ಮುಖ್ಯಸ್ಥರಾಗಿರುವ ಮತ್ತು ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ, ಉನ್ನತ ಶಿಕ್ಷಣ ಪ್ರಭಾರದಲ್ಲಿರುವ ಸರ್ಕಾರದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು, ವೈದ್ಯಕೀಯ ಶಿಕ್ಷಣದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು, ಒಬ್ಬ ಮಹಿಳೆಯೂ ಸೇರಿದಂತೆ ಪ್ರಬಂಧಕ ಮಂಡಲಿಯ ನಾಮನಿರ್ದೇಶಿಸಿದ ಇಬ್ಬರು ಶಿಕ್ಷಣ ತಜ್ಞರು ಇವರುಗಳನ್ನು ಒಳಗೊಂಡ ಒಂದು ಶುಲ್ಕ ನಿಯಂತ್ರಣ ಸಮಿತಿಯು, 9ನೇ ಪ್ರಕರಣದ ಅಡಿಯಲ್ಲಿ ಕರ್ನಾಟಕದ ವಿದ್ಯಾರ್ಥಿಗಳಿಗಾಗಿ ಮೀಸಲಿರಿಸಿದ ವಿಶ್ವವಿದ್ಯಾಲಯದ ಸ್ಥಾನಗಳ ಶುಲ್ಕವನ್ನು ನಿಯಂತ್ರಿಸತಕ್ಕದ್ದು. ಸಮಿತಿಯಲ್ಲಿ ಈ ಉದ್ದೇಶಕ್ಕಾಗಿ ಒಬ್ಬರು ಖ್ಯಾತ ಚಾರ್ಟರ್ಡ್ ಅಕೌಂಟೆಂಟ್ ರವರನ್ನು ಸಹ ಸದಸ್ಯನನ್ನಾಗಿ ಸೇರಿಸಿಕೊಳ್ಳತಕ್ಕದ್ದು.

(2) ಸಮಿತಿಯು, ವಿಶ್ವವಿದ್ಯಾಲಯದ ಪ್ರವೇಶಾತಿಯಲ್ಲಿ ಮತ್ತು ಶುಲ್ಕಗಳ ಸಂಗ್ರಹಣೆಯ ಅನುಪಾಲನೆ ನೋಡಿಕೊಳ್ಳತಕ್ಕದ್ದು.

## ಅಧ್ಯಾಯ – VI

## ಸಂಕೀರ್ಣ

**39. ನೌಕರರ ಸೇವಾ ಷರತ್ತುಗಳು.**– (1) ಪರಿನಿಯಮಗಳ ಮತ್ತು ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಥವಾ ನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳು, ಯಾವುದಾದರೂ ಇದ್ದಲ್ಲಿ, ಅವುಗಳಿಗೆ ಒಳಪಟ್ಟು ಪ್ರತಿಯೊಬ್ಬ ನೌಕರನು ಲಿಖಿತ ಕರಾರಿನ ಅಡಿಯಲ್ಲಿ ನೇಮಕಗೊಳ್ಳತಕ್ಕದ್ದು ಮತ್ತು ಅದನ್ನು ವಿಶ್ವವಿದ್ಯಾಲಯದಲ್ಲಿ ಇಟ್ಟುಕೊಳ್ಳತಕ್ಕದ್ದು ಹಾಗೂ ಅದರ ಪ್ರತಿಯನ್ನು ಸಂಬಂಧಪಟ್ಟ ನೌಕರನಿಗೆ ನೀಡತಕ್ಕದ್ದು.

(2) ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಕಾರ್ಯವಿಧಾನಗಳ ಮೂಲಕ ನಿಯಂತ್ರಿಸತಕ್ಕದ್ದು.

(3) ಕರಾರಿನಿಂದಾಗಿ ವಿಶ್ವವಿದ್ಯಾಲಯ ಮತ್ತು ನೌಕರನ ಮಧ್ಯದಲ್ಲಿ ಉದ್ಭವಿಸಬಹುದಾದ ಯಾವುದೇ ವಿವಾದವನ್ನು, ಲಿಖಿತ ಕರಾರಿನಲ್ಲಿ ಉಪಬಂಧಿಸಿದ ವಿಧಾನದಲ್ಲಿ ಹಾಗೂ ಪರಿನಿಯಮಗಳ ಅನುಸಾರವಾಗಿ ಪರಿಹರಿಸತಕ್ಕದ್ದು.

**40. ಮೇಲ್ಮನವಿ ಹಕ್ಕು.**– ವಿಶ್ವವಿದ್ಯಾಲಯವು ತನ್ನ ನೌಕರರ ಅಥವಾ ವಿದ್ಯಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡ ಸಂದರ್ಭದಲ್ಲಿ, ಬಾಧಿತ ನೌಕರ ಅಥವಾ ವಿದ್ಯಾರ್ಥಿಗಳು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಅಂಥ ಪ್ರಾಧಿಕಾರಕ್ಕೆ ಮೇಲ್ಮನವಿಯನ್ನು ಸಲ್ಲಿಸುವ ಹಕ್ಕನ್ನು ಹೊಂದಿರತಕ್ಕದ್ದು.

**41. ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿ .**– ವಿಶ್ವವಿದ್ಯಾಲಯವು, ತನ್ನ ನೌಕರರ ಪ್ರಯೋಜನಕ್ಕಾಗಿ, ಪರಿನಿಯಮಗಳು ಮತ್ತು ಜಾರಿಯಲ್ಲಿರುವ ಕಾನೂನುಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿಯನ್ನು ರಚಿಸತಕ್ಕದ್ದು ಹಾಗೂ ಅಂಥ ವಿಮಾ ಯೋಜನೆಗಳನ್ನು ಒದಗಿಸತಕ್ಕದ್ದು.

**42. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು.**– ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಅಥವಾ ಇತರ ಸಂಸ್ಥೆಯ ಸದಸ್ಯನಾಗಿ ಯಾವೊಬ್ಬ ವ್ಯಕ್ತಿಯು ಸೂಕ್ತವಾಗಿ ಆಯ್ಕೆಯಾಗಿದ್ದಾನೆಯೇ ಅಥವಾ ನೇಮಕಗೊಂಡಿದ್ದಾನೆಯೇ ಅಥವಾ ಅದಕ್ಕೆ ಅರ್ಹನಾಗಿದ್ದಾನೆಯೇ ಎಂಬ ಯಾವುದೇ ಪ್ರಶ್ನೆ ಉದ್ಭವಿಸಿದರೆ, ಆ ವಿಷಯವನ್ನು ತೀರ್ಮಾನಕ್ಕಾಗಿ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**43. ಸಮಿತಿಗಳ ರಚನೆ.**– 22ನೇ ಪ್ರಕರಣದಲ್ಲಿ ನಮೂದಿಸಿದ ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಅಧಿಕಾರವನ್ನು ಹೊಂದಿರುವ ಅಂಥ ಸದಸ್ಯರನ್ನು ಒಳಗೊಂಡ ಅಂಥ ಪ್ರಾಧಿಕಾರದ ಒಂದು ಸಮಿತಿಯನ್ನು ರಚಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**44. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು.**– ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಂಸ್ಥೆಯ ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ಪೈಕಿ ಯಾವುದೇ ಸ್ಥಾನವು ಆಕಸ್ಮಿಕವಾಗಿ ಖಾಲಿಯಾದರೆ, ಯಾರ ಸ್ಥಾನವು ಖಾಲಿಯಾಗಿ ತುಂಬಬೇಕಾಗಿ ಬಂದಿದೆಯೋ ಆ ಸದಸ್ಯನನ್ನು ಯಾವ ರೀತಿಯಲ್ಲಿ ಆರಿಸಲಾಗಿತ್ತೋ ಅದೇ ರೀತಿಯಲ್ಲಿ ಹೊಸ ಸದಸ್ಯನನ್ನು ಆರಿಸಿ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ಖಾಲಿ ಸ್ಥಾನವನ್ನು ಭರ್ತಿ ಮಾಡಿದ ವ್ಯಕ್ತಿಯು ಆತನು ಯಾವ ಸದಸ್ಯನ ಸ್ಥಾನದಲ್ಲಿ ಭರ್ತಿಯಾಗಿರುವನೋ ಆ ಸದಸ್ಯನು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯನಾಗಿ ಉಳಿಯುತ್ತಿದ್ದ ಬಾಕಿ ಅವಧಿಯವರೆಗೆ ಮಾತ್ರ ಸದಸ್ಯನಾಗಿರತಕ್ಕದ್ದು.

**45. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.–** ಈ ಅಧಿನಿಯಮಕ್ಕೆ ಅಥವಾ ಪರಿನಿಯಮಗಳಿಗೆ ಅಥವಾ ನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ವಿಶ್ವವಿದ್ಯಾಲಯದ ಯಾವೊಬ್ಬ ಅಧಿಕಾರಿ ಅಥವಾ ಇತರ ನೌಕರರ ವಿರುದ್ಧ ಯಾವುದೇ ದಾವೆ ಅಥವಾ ಇತರ ಕಾನೂನು ವ್ಯವಹರಣೆಗಳನ್ನು ನಡೆಸಲು ಅವಕಾಶ ಇರತಕ್ಕದ್ದಲ್ಲ.

**46. ತಾತ್ಕಾಲಿಕ ಉಪಬಂಧಗಳು.–** ಈ ಅಧಿನಿಯಮದ ಮತ್ತು ಪರಿನಿಯಮಗಳ ಯಾವುದೇ ಇತರ ಉಪಬಂಧಗಳಲ್ಲಿ ಏನೇ ಇದ್ದರೂ,–

(i) ಮೊದಲ ಕುಲಪತಿ ಮತ್ತು ಸಹಕುಲಪತಿ, ಯಾರಾದರೂ ಇದ್ದರೆ, ಅವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(ii) ಮೊದಲ ಕುಲಸಚಿವರನ್ನು ಮತ್ತು ಮೊದಲ ಹಣಕಾಸು ಅಧಿಕಾರಿಯವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು; ಮತ್ತು

(iii) ಮೊದಲ ಕಾರ್ಯನಿರ್ವಹಣಾ ಪರಿಷತ್ತು, ಮೊದಲ ಹಣಕಾಸು ಸಮಿತಿ, ಮೊದಲ ಸಂಶೋಧನಾ ಪರಿಷತ್ತು ಹಾಗೂ ಮೊದಲ ಶೈಕ್ಷಣಿಕ ಪರಿಷತ್ತನ್ನು ಕುಲಾಧಿಪತಿಯವರು ರಚಿಸತಕ್ಕದ್ದು.

**47. ಶಾಶ್ವತ ಶಾಸನಬದ್ಧ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಕನಿಷ್ಠ ಇಪ್ಪತ್ತೈದು ಕೋಟಿ ರೂಪಾಯಿಗಳನ್ನುಳ್ಳ ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು ಇದರ ಪೈಕಿ ಕನಿಷ್ಠ ಹದಿನೈದು ಕೋಟಿ ರೂಪಾಯಿಗಳನ್ನು ನಗದು ಹಣದ ರೂಪದಲ್ಲಿ ಮತ್ತು ಉಳಿದದ್ದು ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ಇರತಕ್ಕದ್ದು ಮತ್ತು ಇದನ್ನು ತಾನಾಗಿಯೇ ಹೆಚ್ಚಿಸಬಹುದಾಗಿದ್ದು ಆದರೆ ಕಡಿಮೆ ಮಾಡತಕ್ಕದ್ದಲ್ಲ:

ಪರಂತು, ಬೆಂಗಳೂರು ಅಥವಾ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊರಗಿರುವ ವಿಶ್ವವಿದ್ಯಾಲಯದ ಸಂದರ್ಭದಲ್ಲಿ ಕನಿಷ್ಠ ಹತ್ತು ಕೋಟಿ ರೂಪಾಯಿಗಳು ನಗದು ರೂಪದಲ್ಲಿರತಕ್ಕದ್ದು ಮತ್ತು ಉಳಿದ ಐದು ಕೋಟಿ ರೂಪಾಯಿಗಳು ಬ್ಯಾಂಕ್ ಗ್ಯಾರಂಟಿಯ ರೂಪದಲ್ಲಿರತಕ್ಕದ್ದು.

(2) ವಿಶ್ವವಿದ್ಯಾಲಯವು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಹಣವನ್ನು ಹೂಡಲು ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯವು ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಗೆ ವರ್ಗಾವಣೆ ಮಾಡಬಹುದು. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನೂ ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(4) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಿದ ವರಮಾನದ ಶೇಕಡಾ ಎಪ್ಪತ್ತೈದರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತೈದರಷ್ಟನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಯಲ್ಲಿ ತೊಡಗಿಸತಕ್ಕದ್ದು.

**48. ವಿಶ್ವವಿದ್ಯಾಲಯದ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ನಿಧಿಗಳನ್ನು ಒಳಗೊಂಡ ವಿಶ್ವವಿದ್ಯಾಲಯದ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದು ಕಾಲಕಾಲಕ್ಕೆ ಸ್ವೀಕರಿಸಬಹುದಾದ ದೇಣಿಗೆಗಳು ಮತ್ತು ಇತರ ನಿಧಿಗಳನ್ನು ಒಳಗೊಂಡಿರತಕ್ಕದ್ದು.

(2) ವಿಶ್ವವಿದ್ಯಾಲಯವು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ವಿಶ್ವವಿದ್ಯಾಲಯದ ದತ್ತಿನಿಧಿಯನ್ನು ಹೂಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯ ದತ್ತಿ ನಿಧಿಯು, ವಿಶ್ವವಿದ್ಯಾಲಯವು ತನ್ನ ಸಾಮಾಜಿಕ ಧ್ಯೇಯೋದ್ದೇಶಗಳನ್ನು ನೆರವೇರಿಸುವ ಸಂದರ್ಭದಲ್ಲಿ ಮತ್ತು/ಅಥವಾ ಮುಂಗಾಣದ ಸನ್ನಿವೇಶದಲ್ಲಿ ಉದ್ಭವಿಸಬಹುದಾದ ಹಣಕಾಸು ಸವಾಲುಗಳಿಂದ ತನ್ನನ್ನು ರಕ್ಷಿಸಿಕೊಳ್ಳುವುದಕ್ಕಾಗಿ, ಸ್ವಇಚ್ಛೆಯಿಂದ ನಿರ್ವಹಿಸಿಕೊಂಡು ಬರಲು ಮತ್ತು ಜವಾಬ್ದಾರಿಯಿಂದ ಹಣ ಹೂಡಿಕೆ ಮಾಡಲು ಇಚ್ಛೆಯುಳ್ಳವರಾಗಿ ಸ್ವಯಂ ವಿಧಿಸಿಕೊಂಡ ನಿಧಿಯಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಗೆ ವರ್ಗಾಯಿಸಬಹುದು. ವಿಶ್ವವಿದ್ಯಾಲಯದ ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನು ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(5) ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಬರುವ ವರಮಾನದ ಶೇಕಡಾ ಎಂಭತ್ತರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸದ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತರಷ್ಟನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**49. ಸಾಮಾನ್ಯ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಸಾಮಾನ್ಯ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯವು ವಿಧಿಸಬಹುದಾದ ಎಲ್ಲಾ ಶುಲ್ಕಗಳು;

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೆ ಇರುವ ಯಾವುದೇ ಇತರ ಮೂಲದಿಂದ ಸ್ವೀಕರಿಸಲಾದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ದೇಣಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು;

(2) ಸಾಮಾನ್ಯ ನಿಧಿಗೆ ಜಮಾ ಮಾಡುವ ನಿಧಿಗಳನ್ನು ವಿಶ್ವವಿದ್ಯಾಲಯದ ಎಲ್ಲಾ ಆವರ್ತಕ ವೆಚ್ಚಗಳನ್ನು ಭರಿಸಲು ಉಪಯೋಗಿಸಿಕೊಳ್ಳತಕ್ಕದ್ದು.

**50. ಅಭಿವೃದ್ಧಿ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಅಭಿವೃದ್ಧಿ ನಿಧಿಯನ್ನು ಸಹ ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:-

(i) ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಅಭಿವೃದ್ಧಿ ಶುಲ್ಕಗಳು;

(ii) ವಿಶ್ವವಿದ್ಯಾಲಯದ ಅಭಿವೃದ್ಧಿಯ ಉದ್ದೇಶಗಳಿಗಾಗಿ ಯಾವುದೇ ಇತರ ಮೂಲಗಳಿಂದ ಸ್ವೀಕರಿಸಿದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ವಂತಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು; ಮತ್ತು

(v) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಲಾದ ಎಲ್ಲಾ ವರಮಾನಗಳು.

(2) ಅಭಿವೃದ್ಧಿ ನಿಧಿಗೆ ಕಾಲಕಾಲಕ್ಕೆ ಜಮಾ ಮಾಡಿದ ನಿಧಿಯನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಉಪಯೋಗಿಸಿಕೊಳ್ಳತಕ್ಕದ್ದು.

**51. ನಿಧಿಗಳ ನಿರ್ವಹಣೆ.–** 47, 48, 49 ಮತ್ತು 50ನೇ ಪ್ರಕರಣಗಳಡಿಯಲ್ಲಿ ಸ್ಥಾಪಿಸಲಾದ ನಿಧಿಗಳನ್ನು ಪ್ರಬಂಧಕ ಮಂಡಳಿಯ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ನಿಯಂತ್ರಿಸತಕ್ಕದ್ದು ಹಾಗೂ ನಿರ್ವಹಿಸತಕ್ಕದ್ದು.

**52. ವಾರ್ಷಿಕ ವರದಿ.–** (1) ವಿಶ್ವವಿದ್ಯಾಲಯದ ವಾರ್ಷಿಕ ವರದಿಯನ್ನು ಕಾರ್ಯನಿರ್ವಹಣಾ ಪರಿಷತ್ತಿನ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ಅದರ ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಪ್ರಬಂಧಕ ಮಂಡಳಿಯು ವಾರ್ಷಿಕ ವರದಿಯನ್ನು ತನ್ನ ಸಭೆಯಲ್ಲಿ ಪರಿಗಣಿಸತಕ್ಕದ್ದು ಹಾಗೂ ಅದನ್ನು ಮಾರ್ಪಾಡುಗಳೊಡನೆ ಅಥವಾ ಮಾರ್ಪಾಡುಗಳಿಲ್ಲದೆ ಅನುಮೋದಿಸಬಹುದು.

(3) ಪ್ರಬಂಧಕ ಮಂಡಳಿಯು ಸೂಕ್ತವಾಗಿ ಅನುಮೋದಿಸಿದ ವಾರ್ಷಿಕ ವರದಿಯ ಒಂದು ಪ್ರತಿಯನ್ನು ಪ್ರತಿವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ಡಿಸೆಂಬರ್ 31ಕ್ಕೆ ಮೊದಲು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**53. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.–** (1) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕ ಪತ್ರ ಮತ್ತು ಜಮಾ ಖರ್ಚು ಪಟ್ಟಿಯನ್ನು ಕಾರ್ಯನಿರ್ವಹಣಾ ಪರಿಷತ್ತಿನ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯಕ್ಕೆ ಎಲ್ಲಾ ಮೂಲಗಳಿಂದ ಪ್ರಾಪ್ತವಾಗುವ ಅಥವಾ ಸ್ವೀಕರಿಸಲಾಗುವ ಎಲ್ಲಾ ನಿಧಿಗಳು ಹಾಗೂ ವಿತರಿಸಿದ ಅಥವಾ ಸಂದಾಯ ಮಾಡಿದ ಎಲ್ಲಾ ಮೊಬಲಗುಗಳನ್ನು ವಿಶ್ವವಿದ್ಯಾಲಯವು ನಿರ್ವಹಿಸುವ ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕಪತ್ರಗಳನ್ನು ಪ್ರತಿ ವರ್ಷವೂ ಭಾರತದ ಚಾರ್ಟೆರ್ಡ್ ಅಕೌಂಟೆಂಟ್‌ಗಳ ಸಂಸ್ಥೆಯ ಸದಸ್ಯರಾಗಿರುವ ಒಬ್ಬ ಲೆಕ್ಕಪರಿಶೋಧಕರಿಂದ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಲೆಕ್ಕಪರಿಶೋಧನಾ ವರದಿಯೊಡನೆ, ಪ್ರತಿ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ನವೆಂಬರ್ 30ಕ್ಕೆ ಮೊದಲು ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(4) ವಾರ್ಷಿಕ ಲೆಕ್ಕಪತ್ರಗಳು, ಜಮಾಖರ್ಚು ಪಟ್ಟಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಪ್ರಬಂಧಕ ಮಂಡಳಿಯು ತನ್ನ ಸಭೆಯಲ್ಲಿ ಪರ್ಯಾಲೋಚಿಸತಕ್ಕದ್ದು ಮತ್ತು ಪ್ರಬಂಧಕ ಮಂಡಳಿಯು ಅದನ್ನು ತನ್ನ ಅಭಿಪ್ರಾಯಗಳೊಡನೆ ಸಂದರ್ಶಕರಿಗೆ ಹಾಗೂ ಸರ್ಕಾರಕ್ಕೆ ಪ್ರತಿ ವರ್ಷದ ಡಿಸೆಂಬರ್ 31 ರಂದು ಅಥವಾ ಅದಕ್ಕೆ ಮೊದಲು ಕಳುಹಿಸತಕ್ಕದ್ದು.

(5) ಲೆಕ್ಕಪರಿಶೋಧಕರ ವರದಿಯಲ್ಲಿ ಯಾವುದೇ ಮುಖ್ಯ ಬದಲಾವಣೆ ಇದ್ದ ಸಂದರ್ಭದಲ್ಲಿ, ರಾಜ್ಯ ಸರ್ಕಾರವು ವಿಶ್ವವಿದ್ಯಾಲಯಕ್ಕೆ ನಿರ್ದೇಶನಗಳನ್ನು ಹೊರಡಿಬಹುದು ಮತ್ತು ಅಂಥ ನಿರ್ದೇಶನಗಳು ವಿಶ್ವವಿದ್ಯಾಲಯದ ಮೇಲೆ ಬಂಧನಕಾರಿಯಾಗಿರತಕ್ಕದ್ದು.

**54. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಮಿತಿಯ ಯಾವುದೇ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ ಅಥವಾ ಗೊತ್ತುವಳಿಯು ಅಥವಾ ವಿಶ್ವವಿದ್ಯಾಲಯದ ಸ್ವಾಧೀನದಲ್ಲಿರುವ ಇತರ ದಾಖಲೆಗಳು ಅಥವಾ ವಿಶ್ವವಿದ್ಯಾಲಯವು ಯುಕ್ತವಾಗಿ ನಿರ್ವಹಿಸುವ ಯಾವುದೇ ರಿಜಿಸ್ಟರ್‌ನಲ್ಲಿಯ ಯಾವುದೇ ನಮೂದುಗಳ ಪ್ರತಿಯನ್ನು, ಅದರ ಮೇಲೆ ಕುಲಸಚಿವರು ಪ್ರಮಾಣೀಕರಿಸಿದ್ದರೆ, ಅದನ್ನು ಅಂಥ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ, ಗೊತ್ತುವಳಿ ಅಥವಾ ದಾಖಲೆ ಅಥವಾ ರಿಜಿಸ್ಟರ್‌ನಲ್ಲಿ ಇರುವ ನಮೂದನ್ನು ಮೇಲ್ನೋಟದ ಸಾಕ್ಷ್ಯವೆಂಬುದಾಗಿ ಸ್ವೀಕರಿಸತಕ್ಕದ್ದು ಮತ್ತು ವಿಷಯಗಳ ಸಾಕ್ಷಿಯಾಗಿ ಅಂಗೀಕರಿಸತಕ್ಕದ್ದು ಹಾಗೂ ಮೂಲ ದಾಖಲೆಗಳನ್ನೇ ಸಲ್ಲಿಸಿದ್ದರೆ ಅದನ್ನು, ದಾಖಲಿಸಿರುವ ವಿಷಯಗಳು ಮತ್ತು ವಹಿವಾಟುಗಳ ಸಾಕ್ಷ್ಯವಾಗಿ ಅಂಗೀಕರಿಸಲಾಗುತ್ತಿತ್ತೋ, ಅದೇ ರೀತಿಯಲ್ಲಿ ಇವನ್ನೂ ಸಾಕ್ಷ್ಯವಾಗಿ ಅಂಗೀಕರಿಸತಕ್ಕದ್ದು.

**55. ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ.–** ರಾಜ್ಯಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಥವಾ ಅದರಲ್ಲಿ ಇರುವ ಯಾವುವೇ ಉಪಬಂಧಗಳನ್ನು ಅಥವಾ ಅದರಡಿಯಲ್ಲಿ ರಚಿಸಿದ ಯಾವುವೇ ನಿಯಮಗಳು ಅಥವಾ ಆದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿರ್ದೇಶನ ನೀಡುವುದು ಅವಶ್ಯವೆಂದು ಅಥವಾ ಉಚಿತವೆಂದು ಅಭಿಪ್ರಾಯಪಟ್ಟಲ್ಲಿ ಅದು ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ ಅಥವಾ ಸಂದರ್ಭಾನುಸಾರವಾಗಿ ಕಾರ್ಯನಿರ್ವಹಣಾ ಪರಿಷತ್ತು ಅಂಥ ಪ್ರತಿಯೊಂದು ನಿರ್ದೇಶನವನ್ನು ಪಾಲಿಸತಕ್ಕದ್ದು.

**56. ದಂಡಗಳು.–** (1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿತವಾದ ನಿಯಮಗಳು ಉಪಬಂಧಗಳನ್ನು ಅಥವಾ ಯಾವುದೇ ಪರೀಕ್ಷಾ ವಿಷಯಗಳನ್ನು ಅಥವಾ ಪದವಿಗಳನ್ನು ನೀಡುವುದಕ್ಕೆ ಅಥವಾ ಅಂಕಪಟ್ಟಿಗಳನ್ನು ನೀಡುವುದಕ್ಕೆ ಸಂಬಂಧಪಟ್ಟ ವಿಷಯಗಳಲ್ಲಿ ಉಲ್ಲಂಘನೆಗಳನ್ನು ಮಾಡುವ ಯಾವೊಬ್ಬ ವ್ಯಕ್ತಿಯು, ಅಪರಾಧ ನಿರ್ಣಯವಾದ ಮೇಲೆ, ಐವತ್ತು ಸಾವಿರ ರೂಪಾಯಿಗಳಿಗೆ ಕಡಿಮೆಯಲ್ಲದ ಆದರೆ ಹತ್ತು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಆರು ತಿಂಗಳ ಅವಧಿಗಿಂತ ಕಡಿಮೆಯಲ್ಲದ ಆದರೆ ಎರಡು ವರ್ಷಗಳ ಅವಧಿಯವರೆಗೆ ವಿಸ್ತರಿಸಬಹುದಾದ ಕಾರಾವಾಸದಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು:

ಪರಂತು, ವಿಶ್ವವಿದ್ಯಾಲಯವೂ ಸಹ ಒಳಗೊಂಡಿರುವಲ್ಲಿ, ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಈ ಅಧಿನಿಯಮದ ಅಡಿಯಲ್ಲಿ ಮಂಜೂರು ಮಾಡಲಾದ ಅನುಮತಿ ಪತ್ರವನ್ನು ಹಿಂತೆಗೆದುಕೊಳ್ಳತಕ್ಕದ್ದು.

(2) ಈ ಪ್ರಕರಣದ ಅಡಿಯಲ್ಲಿಯ ದಂಡವನ್ನು ಇತರ ಯಾವುದೇ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಲಾದ ದಂಡಕ್ಕೆ ಬಾಧಕವಾಗದಂತೆ ವಿಧಿಸಬಹುದು.

**57. ಪ್ರವೇಶಿಸುವ ಮತ್ತು ಪರಿಶೋಧಿಸುವ ಅಧಿಕಾರ.–** ಈ ಉದ್ದೇಶಕ್ಕಾಗಿ, ರಾಜ್ಯಸರ್ಕಾರದಿಂದ ಪ್ರಾಧಿಕೃತಗೊಂಡ 'ಎ' ಸಮೂಹದ ಅಧಿಕಾರಿ ದರ್ಜೆಗಿಂತ ಕಡಿಮೆಯಿಲ್ಲದ ದರ್ಜೆಯ ಯಾವೊಬ್ಬ ಅಧಿಕಾರಿಯು, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಶನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ 37) ಅಡಿಯಲ್ಲಿ ನಿರ್ದಿಷ್ಟಪಡಿಸಿರಬಹುದಾದ ಅಂಥ ಷರತ್ತುಗಳಿಗೆ ಒಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ, ಆ ಅಧಿನಿಯಮದ 9ನೇ ಪ್ರಕರಣದ ಅಡಿಯಲ್ಲಿ ಉಪಬಂಧಿಸಲಾದಂತಹವೇ ಅಧಿಕಾರಗಳನ್ನು ಚಲಾಯಿಸಲು ಮತ್ತು ಪ್ರಕಾರ್ಯಗಳನ್ನು ನೆರವೇರಿಸಲು ಅಧಿಕೃತನಾದ ಅಧಿಕಾರಿ ಎಂಬುದಾಗಿ ಭಾವಿಸತಕ್ಕದ್ದು.

**58. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ನಿರ್ದೇಶನವನ್ನು ನೀಡುವ ಅಧಿಕಾರ.–** (1) ವಿಶ್ವವಿದ್ಯಾಲಯವು ತನ್ನ ರಚನೆ ಅಥವಾ ನಿಗಮನವನ್ನು ನಿಯಂತ್ರಿಸುವ ಕಾನೂನಿಗೆ ಅನುಸಾರವಾಗಿ ತನ್ನ ಸಮಾಪನವನ್ನು ಉದ್ದೇಶಿಸಿದ್ದಲ್ಲಿ, ಅದು ಕನಿಷ್ಠ ಆರು ತಿಂಗಳ ಲಿಖಿತ ಪೂರ್ವ ಸೂಚನೆಯನ್ನು (ನೋಟೀಸು) ಸರ್ಕಾರಕ್ಕೆ ನೀಡತಕ್ಕದ್ದು.

(2) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಈ ಕೆಳಗಿನವುಗಳ ಬಗ್ಗೆ, ಎಂದರೆ:-

(i) ಪದವಿಯನ್ನು ನೀಡುವುದಕ್ಕಾಗಿ ಬೋಧನೆಯ ಗುಣಮಟ್ಟ;

(ii) ಶಿಕ್ಷಣದ ಗುಣಮಟ್ಟ;

(iii) ಉನ್ನತ ಶಿಕ್ಷಣದ ವ್ಯಾಪಾರೀಕರಣವನ್ನು ತಡೆಗಟ್ಟುವುದು;

(iv) ಅಧಿನಿಯಮದ ಉಪಬಂಧಗಳ ಉಲ್ಲಂಘನೆಯ ಬಗ್ಗೆ, ಯಾವುದಾದರೂ ಇದ್ದಲ್ಲಿ,

– ಇವುಗಳ ಬಗ್ಗೆ ನಿಯತಕಾಲಿಕ ಪರಿವೀಕ್ಷಣೆಯನ್ನು ನಡೆಸತಕ್ಕದ್ದು ಮತ್ತು ಸರ್ಕಾರಕ್ಕೆ ವರದಿಯನ್ನು ಕಳುಹಿಸತಕ್ಕದ್ದು.

(3) ದುರ್ವ್ಯವಹರಣೆ, ದುರಾಡಳಿತ ಮತ್ತು ಅಶಿಸ್ತು ಆಗಿದೆ ಎಂಬುದನ್ನು ಗುರುತಿಸಿದರೆ, ಸರ್ಕಾರವು, ವಿಶ್ವವಿದ್ಯಾಲಯದ ಆಡಳಿತವರ್ಗದವರಿಗೆ ಆಡಳಿತವನ್ನು ಸರಿಪಡಿಸಬೇಕೆಂದು ನಿರ್ದೇಶನಗಳನ್ನು ನೀಡತಕ್ಕದ್ದು. ನಿಯಮಿಸಬಹುದಾದ ಅಂಥ ಅವಧಿಯೊಳಗೆ ಆ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುವ ಹಕ್ಕು ಸರ್ಕಾರದಲ್ಲಿ ನಿಹಿತವಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ವಿಧಾನವು, ಸರ್ಕಾರವು ಈ ಸಂಬಂಧದಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು:

ಪರಂತು, ವಿಶ್ವವಿದ್ಯಾಲಯವು ತನ್ನ ಕಾರಣಗಳನ್ನು ಹೇಳಿಕೊಳ್ಳಲು ಸಮಂಜಸ ಅವಕಾಶಗಳನ್ನು ನೀಡಿದ ಹೊರತು ಅಂ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

(5) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೋಟಿಸನ್ನು ಸ್ವೀಕರಿಸಿದ ಮೇಲೆ, ಸರ್ಕಾರವು ಸಂಬಂಧಿಸಿದ ನಿಯಂತ್ರಣಾ ಪ್ರಾಧಿಕಾರದೊಡನೆ ಸಮಾಲೋಚಿಸಿ, ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ಅಥವಾ ವ್ಯಾಸಂಗ ಕ್ರಮವನ್ನು ಪರಿಸಮಾಪನಗೊಳಿಸಲು ಉದ್ದೇಶಿಸಿದ ದಿನಾಂಕದಿಂದ, ವಿಶ್ವವಿದ್ಯಾಲಯದಲ್ಲಿ ನಿಯತ ವ್ಯಾಸಂಗ ಕ್ರಮಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕೊನೆಯ ತಂಡ (ಬ್ಯಾಚ್) ತನ್ನ ವ್ಯಾಸಂಗ ಕ್ರಮವನ್ನು ಮುಗಿಸುವವರೆಗೆ ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು.

**59. ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು.–** (1) 58ನೇ ಪ್ರಕರಣದ (5)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ಅದರ ಆಡಳಿತಾತ್ಮಕ ವೆಚ್ಚಗಳನ್ನು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿ, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಭರಿಸತಕ್ಕದ್ದು.

(2) ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ವಿಶ್ವವಿದ್ಯಾಲಯದ ವೆಚ್ಚವನ್ನು ಭರಿಸಲು 47, 48, 49 ಮತ್ತು 50ನೇ ಪ್ರಕರಣಗಳ ಅಡಿಯಲ್ಲಿ ಉಲ್ಲೇಖಿಸಲಾದ ನಿಧಿಯು ಸಾಕಷ್ಟು ಇಲ್ಲದಿದ್ದಲ್ಲಿ, ಅಂಥ ವೆಚ್ಚವನ್ನು ಸರ್ಕಾರವು, ವಿಶ್ವವಿದ್ಯಾಲಯದ ಸ್ವತ್ತುಗಳು ಮತ್ತು ಆಸ್ತಿಗಳನ್ನು ವಿಲೇ ಮಾಡುವ ಮೂಲಕ ಭರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಸಮಾಪನೆಯು ದುರ್ವ್ಯವಹರಣೆ ಅಥವಾ ದುರಾಡಳಿತದ ಕಾರಣಗಳಿಗಾಗಿ ಆಗಿದ್ದರೆ, ಸರ್ಕಾರವು ಅಂಥ ದುರ್ವ್ಯವಹಾರಕ್ಕೆ ಅಥವಾ ದುರಾಡಳಿತಕ್ಕೆ ಹೊಣೆಯಾಗಿರುವ ವ್ಯಕ್ತಿಗಳನ್ನು ಗುರುತಿಸುವ ಮತ್ತು ಅವರ ಮೇಲೆ ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ದಂಡನೆಯನ್ನು ವಿಧಿಸಲು ಸ್ವತಂತ್ರವಾಗಿರತಕ್ಕದ್ದು.

**60. ತೊಂದರೆಗಳ ನಿವಾರಣೆಗೆ ಅಧಿಕಾರ.–** (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಅಥವಾ ಆದೇಶದ ಮೂಲಕ ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಐದು ವರ್ಷಗಳು ಮುಕ್ತಾಯವಾದ ತರುವಾಯ ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಅಧಿಸೂಚನೆ ಅಥವಾ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

**61. ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ.–** (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ಹೊರಡಿಸಲಾದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಉಭಯ ಸದನಗಳು ಒಪ್ಪಿದರೆ ತದನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ ಯಾವುದೇ ಅಂಥ ಮಾರ್ಪಾಡು ಅಥವಾ ರದ್ದತಿಯು ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವನ್ನು ಉಂಟುಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಜಿ.ಕೆ. ಬೋರೇಗೌಡ**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) (500 ಪ್ರತಿಗಳು)

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| | | |
|---|---|---|
| ಭಾಗ-IVA | ಬೆಂಗಳೂರು, ಶನಿವಾರ, ಏಪ್ರಿಲ್ ೨೧, ೨೦೧೮ (ವೈಶಾಖ ೦೧, ಶಕ ವರ್ಷ ೧೯೪೦) | ನಂ. ೫೯೬ |
| *Part-IVA* | *Bengaluru, Saturday, April 21, 2018 (Vyashaka 01, Shaka Varsha 1940)* | *No. 596* |


ಸಂಸದೀಯ ವ್ಯವಹಾರಗಳ ಸಚಿವಾಲಯ

ಅಧಿಸೂಚನೆ

**ಸಂಖ್ಯೆ: ಸಂವ್ಯಶಾಇ 06 ಶಾಸನ 2018, ಬೆಂಗಳೂರು, ದಿನಾಂಕ: 21-04-2018**

ಅಮಿಟಿ ವಿಶ್ವವಿದ್ಯಾಲಯ ವಿಧೇಯಕ, 2018ಕ್ಕೆ 2018ರ ಏಪ್ರಿಲ್ ತಿಂಗಳ 19ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2018ರ ಕರ್ನಾಟಕ ಅಧಿನಿಯಮ ಸಂಖ್ಯೆ: 16 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2018ರ ಕರ್ನಾಟಕ ಅಧಿನಿಯಮ ಸಂಖ್ಯೆ: 16**

(2018ರ ಏಪ್ರಿಲ್ ತಿಂಗಳ 21ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಅಮಿಟಿ ವಿಶ್ವವಿದ್ಯಾಲಯ ಅಧಿನಿಯಮ, 2018

(2018ರ ಏಪ್ರಿಲ್ ತಿಂಗಳ 19ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮೋದನೆಯನ್ನು ಪಡೆಯಲಾಗಿದೆ)

ಮಾನವಿಕಗಳು, ಭಾಷೆಗಳು, ಜೀವ, ಶಾರೀರಿಕ ಮತ್ತು ಸಂಬಂಧಿತ ವಿಜ್ಞಾನ, ಗಣಕ ವಿಜ್ಞಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ನ್ಯಾನೋ ತಂತ್ರಜ್ಞಾನ, ಪ್ರವಾಸ ಮತ್ತು ಪ್ರವಾಸೋದ್ಯಮ, ಗ್ರಾಮೀಣ ಮತ್ತು ನಗರಾಭಿವೃದ್ಧಿ, ಸಮೂಹ ಸಂಪರ್ಕ, ವಿಧಿವಿಜ್ಞಾನ, ಮನಶಾಸ್ತ್ರ, ಬೈಜಿಕ (Nuclear) ವಿಜ್ಞಾನ, ಲಲಿತಕಲೆಗಳು, ಬಾಹ್ಯಕಾಶ, ಸೌರಶಕ್ತಿ ಮತ್ತು ನವೀಕರಿಸಬಹುದಾದ ಇಂಧನ, ಸೂಕ್ಷ್ಮಜೀವಿ ಶಾಸ್ತ್ರ, ಫ್ಯಾಶನ್ ವಿನ್ಯಾಸ ಮತ್ತು ತಂತ್ರಜ್ಞಾನ ಕೋರ್ಸುಗಳು, ಜೀವಮಾಹಿತಿ ಶಾಸ್ತ್ರ (Bio-informatics), ಜಾಲತಂತ್ರಜ್ಞಾನ (Network) ಮತ್ತು ವ್ಯವಸ್ಥಾಪನೆ, ವಿಮಾಗಣಿತ (Actuarial) ವಿಜ್ಞಾನ, ಭೌಗೋಳಿಕ ಮಾಹಿತಿ ವ್ಯವಸ್ಥೆ ಮತ್ತು ದೂರಸಂವಾದಿ (Remote sensing) ಕಾನೂನು, ವಾಸ್ತುಶಿಲ್ಪ, ಯೋಜನೆ ಮತ್ತು ವಿನ್ಯಾಸ ಮತ್ತು ಸಂಬಂಧಿತ ವಲಯಗಳು, ವಾಣಿಜ್ಯ, ಕಲೆ ಮತ್ತು ವ್ಯವಸ್ಥಾಪನೆಗಳಲ್ಲಿ ಪದವಿ, ಸ್ನಾತಕೋತ್ತರ, ಡಾಕ್ಟೊರಲ್ ಮತ್ತು ಪೋಸ್ಟ್ ಡಾಕ್ಟೊರಲ್ ಕೋರ್ಸುಗಳಿಗೆ ಮುಂದುವರಿಯುವ ಮತ್ತು ಅವುಗಳನ್ನು ಒಳಗೊಳ್ಳುವ ವಿಶ್ವವಿದ್ಯಾಲಯ ಶಿಕ್ಷಣದಲ್ಲಿನ ಪ್ರಗತಿಯನ್ನು ಮತ್ತು ಅನ್ವೇಷಣೆಯನ್ನು ಬೆಂಬಲಿಸುವುದು, ಪ್ರೋತ್ಸಾಹಿಸುವುದು ಮತ್ತು ಕೈಗೊಳ್ಳುವುದು ಹಾಗೂ ಈ ಕ್ಷೇತ್ರಗಳಲ್ಲಿ ಸಲಹೆಯನ್ನೂ ಒಳಗೊಂಡಂತೆ ಸಂಶೋಧನೆ, ಪ್ರಗತಿ ಮತ್ತು ಜ್ಞಾನ ಪ್ರಸಾರಕ್ಕೆ ಉಪಬಂಧಗಳನ್ನು ಕಲ್ಪಿಸಲು ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಿಗಾಗಿ ರಿಟ್ನಂಡ್ ಬ್ಯಾಲ್ವಡ್ ಶಿಕ್ಷಣ ಪ್ರತಿಷ್ಠಾನ, ಇ-27, ಡಿಫೆನ್ಸ್ ಕಾಲೋನಿ, ನವದೆಹಲಿ-110024, ಇವರ ಮೂಲಕ ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದಕ್ಕಾಗಿ ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಮಾನವಿಕಗಳು, ಭಾಷೆಗಳು, ಜೀವ, ಶಾರೀರಿಕ ಮತ್ತು ಸಂಬಂಧಿತ ವಿಜ್ಞಾನ, ಗಣಕ ವಿಜ್ಞಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ನ್ಯಾನೋ ತಂತ್ರಜ್ಞಾನ, ಪ್ರವಾಸ ಮತ್ತು ಪ್ರವಾಸೋದ್ಯಮ, ಗ್ರಾಮೀಣ ಮತ್ತು ನಗರಾಭಿವೃದ್ಧಿ, ಸಮೂಹ ಸಂಪರ್ಕ, ವಿಧಿವಿಜ್ಞಾನ, ಮನಶಾಸ್ತ್ರ, ಬೈಜಿಕ ವಿಜ್ಞಾನ,

ಲಲಿತಕಲೆಗಳು, ಬಾಹ್ಯಕಾಶ, ಸೌರಶಕ್ತಿ ಮತ್ತು ನವೀಕರಿಸಬಹುದಾದ ಇಂಧನ, ಸೂಕ್ಷ್ಮಜೀವಿ ಶಾಸ್ತ್ರ, ಫ್ಯಾಶನ್ ವಿನ್ಯಾಸ ಮತ್ತು ತಂತ್ರಜ್ಞಾನ ಕೋರ್ಸುಗಳು, ಜೀವಮಾಹಿತಿ ಶಾಸ್ತ್ರ (Bio-informatics), ಜಾಲತಂತ್ರಜ್ಞಾನ (Network) ಮತ್ತು ವ್ಯವಸ್ಥಾಪನೆ, ವಿಮಾಗಣಿತ ವಿಜ್ಞಾನ, ಭೌಗೋಳಿಕ ಮಾಹಿತಿ ವ್ಯವಸ್ಥೆ ಮತ್ತು ದೂರಸಂವಾದಿ ಕಾನೂನು, ವಾಸ್ತುಶಿಲ್ಪ, ಯೋಜನೆ ಮತ್ತು ವಿನ್ಯಾಸ ಮತ್ತು ಸಂಬಂಧಿತ ವಲಯಗಳು, ವಾಣಿಜ್ಯ, ಕಲೆ ಮತ್ತು ವ್ಯವಸ್ಥಾಪನೆಗಳಲ್ಲಿ ಪದವಿ, ಸ್ನಾತಕೋತ್ತರ, ಡಾಕ್ಟೊರಲ್ ಮತ್ತು ಪೋಸ್ಟ್ ಡಾಕ್ಟೊರಲ್ ಕೋರ್ಸುಗಳಿಗೆ ಮುಂದುವರಿಯುವ ಮತ್ತು ಅವುಗಳನ್ನು ಒಳಗೊಳ್ಳುವ ವಿಶ್ವವಿದ್ಯಾಲಯ ಶಿಕ್ಷಣದಲ್ಲಿನ ಪ್ರಗತಿಯನ್ನು ಮತ್ತು ಅನ್ವೇಷಣೆಯನ್ನು ಬೆಂಬಲಿಸುವುದು, ಪ್ರೋತ್ಸಾಹಿಸುವುದು ಮತ್ತು ಕೈಗೊಳ್ಳುವುದು ಹಾಗೂ ಈ ಕ್ಷೇತ್ರಗಳಲ್ಲಿ ಸಲಹೆಯನ್ನೂ ಒಳಗೊಂಡಂತೆ ಸಂಶೋಧನೆ, ಪ್ರಗತಿ ಮತ್ತು ಜ್ಞಾನ ಪ್ರಸಾರಕ್ಕೆ ಉಪಬಂಧಗಳನ್ನು ಕಲ್ಪಿಸಲು ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಿಗಾಗಿ ರಿಟ್ನಂಡ್ ಬ್ಯಾಲ್ವಡ್ ಶಿಕ್ಷಣ ಪ್ರತಿಷ್ಠಾನ, ಇ-27, ಡಿಫೆನ್ಸ್ ಕಾಲೋನಿ, ನವದೆಹಲಿ-110024, ಇವರ ಮೂಲಕ ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೊಂಬತ್ತನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

## ಅಧ್ಯಾಯ - I
## ಪ್ರಾರಂಭಿಕ

**1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಅಮಿಟಿ ವಿಶ್ವವಿದ್ಯಾಲಯ ಅಧಿನಿಯಮ, 2018 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. ಪರಿಭಾಷೆಗಳು.-** ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) "ಶೈಕ್ಷಣಿಕ ಪರಿಷತ್ತು (ಅಕೆಡೆಮಿಕ್ ಕೌನ್ಸಿಲ್)" ಎಂದರೆ, 25ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿಸಲಾದ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು;

(ಬಿ) "ಕಾರ್ಯಸೂಚಿ ವಿಷಯಗಳು", ಎಂದರೆ, ಪರಿನಿಯಮಗಳಲ್ಲಿ ಹೆಸರಿಸಬಹುದಾದ ಮತ್ತು ಒಂದು ಸಭೆಯಲ್ಲಿ ಆ ವಿಷಯಗಳನ್ನು ಮತ್ತು ಕಲಾಪಗಳನ್ನು ಅನುಮೋದಿಸಬಹುದೆಂದು ತಮ್ಮ ಸಮ್ಮತಿ ಸೂಚಿಸಿ ಕುಲಾಧಿಪತಿಯವರು ಮುಂಚಿತವಾಗಿಯೇ ಲಿಖಿತ ಅನುಮೋದನೆಯನ್ನು ಕೊಟ್ಟಿದ್ದಾಗ ಮಾತ್ರವೇ ಸಂದರ್ಭಾನುಸಾರ ಪ್ರಬಂಧಕರ ಮಂಡಳಿ ಅಥವಾ ವ್ಯವಸ್ಥಾಪನಾ ಮಂಡಳಿ ಅಥವಾ ಶೈಕ್ಷಣಿಕ ಪರಿಷತ್ತು ಅಥವಾ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳು ಅಥವಾ ಯಾವುದೇ ಸಮಿತಿಯವರು ಕಾರ್ಯಸೂಚಿಯಲ್ಲಿ ಸೇರಿಸಬಹುದಾದ ಅಥವಾ ಸಭೆಯಲ್ಲಿ ಚರ್ಚೆಗೆ ತೆಗೆದುಕೊಂಡು ನಿರ್ಣಯವನ್ನು ಕೊಡಬಹುದಾದ ಎಲ್ಲಾ ವಿಷಯಗಳು ಮತ್ತು ಕಲಾಪಗಳು;

(ಸಿ) "ಪ್ರಬಂಧಕರ ಮಂಡಳಿ" ಎಂದರೆ, 23ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಪ್ರಬಂಧಕರ ಮಂಡಳಿ;

(ಡಿ) "ವ್ಯವಸ್ಥಾಪನಾ ಮಂಡಳಿ" ಎಂದರೆ 24ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದಂತೆ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿ;

(ಇ) "ಕುಲಾಧಿಪತಿ", "ಕುಲಪತಿ", "ಸಹಕುಲಪತಿ" ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ ಮತ್ತು ಸಹಕುಲಪತಿ;

(ಎಫ್) "ಕ್ಯಾಂಪಸ್" ಎಂದರೆ, ಅದು ರಾಜ್ಯದೊಳಗೆ ಇರುವ ವಿಶ್ವವಿದ್ಯಾಲಯವು ಸ್ಥಾಪಿಸಿದ, ನಿರ್ವಹಿಸುವ ಒಂದು ಕ್ಯಾಂಪಸ್;

(ಜಿ) "ಸಮಿತಿಗಳು" ಎಂದರೆ, ಈ ಅಧಿನಿಯಮದಡಿಯಲ್ಲಿ ರೂಪಿಸಲಾದ ಸಮಿತಿಗಳು ಅಥವಾ ಸಂದರ್ಭಾನುಸಾರವಾಗಿ ವಿಶ್ವವಿದ್ಯಾಲಯದ ವಿವಿಧ ಕಾರ್ಯಕರ್ತರು ರಚಿಸಿರುವ ಸಮಿತಿಗಳು ಮತ್ತು ಅದರಲ್ಲಿ ಶೋಧನಾ ಸಮಿತಿ, ನಾಮನಿರ್ದೇಶನ ಸಮಿತಿ, ಹಣಕಾಸು ಸಮಿತಿ, ಹಣಕಾಸು ಪರಿಷತ್ತು ಮತ್ತು ಅಂಥ ಇತರ ಸಮಿತಿಗಳು ಒಳಗೊಳ್ಳುತ್ತವೆ;

(ಎಚ್) "ಘಟಕ ಕಾಲೇಜು" ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುತ್ತಿರುವ ಒಂದು ಕಾಲೇಜು ಅಥವಾ ಸಂಸ್ಥೆ;

(ಐ) "ಹಣಕಾಸು ಸಮಿತಿ" ಎಂದರೆ, 27ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಹಣಕಾಸು ಸಮಿತಿ;

(ಜೆ) "ಸರ್ಕಾರ" ಎಂದರೆ, ಕರ್ನಾಟಕ ಸರ್ಕಾರ;

(ಕೆ) "ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳು" ಎಂದರೆ, ವಿಶ್ವವಿದ್ಯಾಲಯ ಅನುದಾನ ಆಯೋಗ, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು, ರಾಷ್ಟ್ರೀಯ ಬೋಧಕ ಶಿಕ್ಷಣ ಪರಿಷತ್ತು, ಭಾರತೀಯ ವೈದ್ಯಕೀಯ ಪರಿಷತ್ತು, ಭಾರತೀಯ ಔಷಧ ವಿಜ್ಞಾನ ಪರಿಷತ್ತು, ರಾಷ್ಟ್ರೀಯ ಮೌಲ್ಯಮಾಪನ ಮತ್ತು ಅಧಿಮಾನ್ಯತಾ ಪರಿಷತ್ತು, ಭಾರತೀಯ ಕೃಷಿ ಸಂಶೋಧನಾ ಪರಿಷತ್ತು, ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಪರಿಷತ್ತು ಮತ್ತು ಸರ್ಕಾರವನ್ನು ಒಳಗೊಂಡು ಉನ್ನತ ಶಿಕ್ಷಣದಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುವಂತೆ ನೋಡಿಕೊಳ್ಳುವುದಕ್ಕಾಗಿ ಗುಣಮಟ್ಟಗಳು ಮತ್ತು ಷರತ್ತುಗಳನ್ನು ವಿಧಿಸುವುದಕ್ಕಾಗಿ, ಕೇಂದ್ರ ಸರ್ಕಾರವು ಸ್ಥಾಪಿಸಿರುವ ಒಂದು ಸಂಸ್ಥೆ;

(ಎಲ್) "ನಿಯಮಿಸಲಾದುದು" ಎಂದರೆ, ಈ ಅಧಿನಿಯಮದಡಿಯಲ್ಲಿ ಸರ್ಕಾರವು ರಚಿಸಲಾದ ನಿಯಮಗಳ ಮೂಲಕ ನಿಯಮಿಸಲಾದುದು;

(ಎಂ) "ಒಂದು ಘಟಕ ಕಾಲೇಜಿಗೆ ಸಂಬಂಧಪಟ್ಟಂತೆ ಪ್ರಾಂಶುಪಾಲರು" ಎಂದರೆ, ಘಟಕ ಕಾಲೇಜಿನ ಮುಖ್ಯಸ್ಥರು ಮತ್ತು ಪ್ರಾಂಶುಪಾಲರು ಇಲ್ಲದಿದ್ದಲ್ಲಿ ಅಥವಾ ನೇಮಕವಾದ ಪ್ರಾಂಶುಪಾಲರ ಗೈರುಹಾಜರಿಯಲ್ಲಿ, ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ತಾತ್ಕಾಲಿಕವಾಗಿ ನೇಮಕಗೊಂಡಿರುವ ಉಪಪ್ರಾಂಶುಪಾಲರು ಅಥವಾ ಯಾವುದೇ ಇತರ ವ್ಯಕ್ತಿಯೂ ಇದರಲ್ಲಿ ಒಳಗೊಳ್ಳುತ್ತಾರೆ;

(ಎನ್) "ಕುಲಸಚಿವರು" ಎಂದರೆ, ವಿಶ್ವವಿದ್ಯಾಲಯದ ಕುಲಸಚಿವರು;

(ಒ) "ಪ್ರಾದೇಶಿಕ ಕೇಂದ್ರ" ಎಂದರೆ, ರಾಜ್ಯದೊಳಗೆ ಅಧ್ಯಯನ ಕೇಂದ್ರಗಳ ಕಾರ್ಯವನ್ನು ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ಮಾಡುವ ಉದ್ದೇಶಕ್ಕಾಗಿ ಮತ್ತು ಅಂಥ ಕೇಂದ್ರಕ್ಕೆ ಕಾರ್ಯಕಾರಿ ಪರಿಷತ್ತು ವಹಿಸಿಕೊಡಬಹುದಾದ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸುವುದಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಅಥವಾ ನಿರ್ವಹಿಸಿಕೊಂಡುಬರುವ ಒಂದು ಕೇಂದ್ರ;

(ಪಿ) ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ "ಪ್ರಾಯೋಜಕ ಸೊಸೈಟಿ" ಎಂದರೆ ಸೊಸೈಟಿಗಳ ನೋಂದಣಿ ಅಧಿನಿಯಮ, 1860ರ (1860ರ ಕೇಂದ್ರ ಅಧಿನಿಯಮ 21) ಅಡಿಯಲ್ಲಿ ನೋಂದಾಯಿಸಲಾದ ರಿಟ್ನಂಡ್ ಬ್ಯಾಲ್ವಡ್ ಶಿಕ್ಷಣ ಪ್ರತಿಷ್ಠಾನ (ರಿ);

(ಕ್ಯೂ) "ಸೊಸೈಟಿ" ಎಂದರೆ, ಸೊಸೈಟಿಗಳ ನೋಂದಣಿ ಅಧಿನಿಯಮ, 1860ರ (1860ರ ಕೇಂದ್ರ ಅಧಿನಿಯಮ 21) ಅಡಿಯಲ್ಲಿ ನೋಂದಾಯಿಸಲಾದ ರಿಟ್ನಂಡ್ ಬ್ಯಾಲ್ವಡ್ ಶಿಕ್ಷಣ ಪ್ರತಿಷ್ಠಾನ (ರಿ), ಇ–27, ಡಿಫೆನ್ಸ್ ಕಾಲೋನಿ, ನವದೆಹಲಿ–110024;

(ಆರ್) "ರಾಜ್ಯ" ಎಂದರೆ, ಕರ್ನಾಟಕ ರಾಜ್ಯ;

(ಎಸ್) "ಪರಿನಿಯಮಗಳು" ಮತ್ತು "ವಿನಿಯಮಗಳು" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಅನುಕ್ರಮವಾಗಿ ವಿಶ್ವವಿದ್ಯಾಲಯದ ಪರಿನಿಯಮಗಳು ಮತ್ತು ವಿನಿಯಮಗಳು;

(ಟಿ) "ಅಧ್ಯಯನ ಕೇಂದ್ರ" ಎಂದರೆ, ವಿದ್ಯಾರ್ಥಿಗಳಿಗೆ ಅಗತ್ಯವಾದ ಬುದ್ಧಿವಾದ, ಸಲಹೆಗಳನ್ನು ನೀಡುವ ಅಥವಾ ಇತರ ಯಾವುದೇ ನೆರವನ್ನು ನೀಡುವ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವು ರಾಜ್ಯದೊಳಗೆ ಸ್ಥಾಪಿಸಿದ ಮತ್ತು ನಿರ್ವಹಿಸಿಕೊಂಡುಬಂದ ಒಂದು ಕೇಂದ್ರ;

(ಯು) "ಅಧ್ಯಾಪಕರು" ಎಂದರೆ, ಒಬ್ಬ ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಒಂದು ಘಟಕ ಕಾಲೇಜಿನಲ್ಲಿ ಬೋಧಿಸುವುದಕ್ಕೆ ಅಥವಾ ಸಂಶೋಧನೆ ನಡೆಸುವುದಕ್ಕೆ ಅಥವಾ ಸಂಶೋಧನೆಗೆ ಮಾರ್ಗದರ್ಶನ ನೀಡುವುದಕ್ಕೆ ನೇಮಕವಾದ ಅಂಥ ಇತರ ವ್ಯಕ್ತಿ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗವು ನಿರ್ದಿಷ್ಟಪಡಿಸಿದ ಗುಣಮಟ್ಟಗಳಿಗೆ ಅನುಸಾರವಾಗಿ ಇರುವ ಘಟಕ ಕಾಲೇಜಿನ ಪ್ರಾಂಶುಪಾಲರು ಇದರಲ್ಲಿ ಒಳಗೊಳ್ಳುತ್ತಾರೆ;

(ವಿ) "ವಿಶ್ವವಿದ್ಯಾಲಯ" ಎಂದರೆ, ಈ ಅಧಿನಿಯಮದಡಿಯಲ್ಲಿ ಸ್ಥಾಪಿಸಿ ನಿಗಮಿತಗೊಳಿಸಲಾದ ಅಮಿಟಿ ವಿಶ್ವವಿದ್ಯಾಲಯ;

(ಡಬ್ಲ್ಯೂ) "ವಿಶ್ವವಿದ್ಯಾಲಯ ಅನುದಾನಗಳ ಆಯೋಗ" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) 4ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ಆಯೋಗ;

(ಎಕ್ಸ್) "ಸಂದರ್ಶಕರು" ಎಂದರೆ, 13ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ವಿಶ್ವವಿದ್ಯಾಲಯದ ಸಂದರ್ಶಕರು.

## ಅಧ್ಯಾಯ– II
## ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

**3. ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ.**- (1) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಹಕ್ಕನ್ನು ಪ್ರಾಯೋಜಕ ಸೊಸೈಟಿಯು ಹೊಂದಿರತಕ್ಕದ್ದು.

(2) ಸೊಸೈಟಿಯು ರಾಜ್ಯ ಸರ್ಕಾರಕ್ಕೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವವನ್ನು ಸಲ್ಲಿಸತಕ್ಕದ್ದು.

(3) ಪ್ರಸ್ತಾವವು ಈ ಮುಂದಿನ ವಿವರಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಸೊಸೈಟಿಯ ವಿವರಗಳೊಂದಿಗೆ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು;

(ii) ವಿಶ್ವವಿದ್ಯಾಲಯದ ವ್ಯಾಪ್ತಿ ಮತ್ತು ಸ್ಥಾನಮಾನ ಹಾಗೂ ಭೂಮಿಯ ಲಭ್ಯತೆ;

(iii) ಪ್ರಾರಂಭದ ದಿನಾಂಕದಿಂದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳಬೇಕೆಂದಿರುವ ಅಧ್ಯಯನ ಮತ್ತು ಸಂಶೋಧನಾ ಕಾರ್ಯಕ್ರಮಗಳ ಸ್ವರೂಪ ಮತ್ತು ಬಗೆಗಳು;

(iv) ಪ್ರಾರಂಭಿಸಬೇಕೆಂದು ಪ್ರಸ್ತಾಪಿಸಿರುವ ವ್ಯಾಸಂಗ ವಿಭಾಗಗಳು (ಫ್ಯಾಕಲ್ಟಿಗಳು), ಅಧ್ಯಯನ ಕ್ರಮಗಳು ಮತ್ತು ಸಂಶೋಧನೆಗಳ ಸ್ವರೂಪ;

(v) ಕಟ್ಟಡಗಳು, ಸಲಕರಣೆಗಳು ಮತ್ತು ರಚನಾ ಸೌಕರ್ಯಗಳನ್ನು ಒದಗಿಸುವಂಥ ಕ್ಯಾಂಪಸ್ ಅಭಿವೃದ್ಧಿ;

(vi) ಪ್ರಾರಂಭದ ದಿನಾಂಕದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಗಾಗಿ ಬಂಡವಾಳ ವೆಚ್ಚದ ಹಂತಗಳು;

(vii) ಬಾಬುವಾರು ಆವರ್ತಕ ವೆಚ್ಚ, ಆರ್ಥಿಕ ಮೂಲಗಳು ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ತಗಲುವ ಅಂದಾಜು ವೆಚ್ಚ;

(viii) ಸಂಪನ್ಮೂಲ ಸಂಗ್ರಹಣೆಗಾಗಿ ಯೋಜನೆ ಮತ್ತು ಅದಕ್ಕೆ ಬಂಡವಾಳದಿಂದ ತಗಲುವ ವೆಚ್ಚ ಹಾಗೂ ಪ್ರತಿಯೊಂದು ಮೂಲಕ್ಕೂ ಮರು ಸಂದಾಯ ಮಾಡುವ ರೀತಿ;

(ix) ವಿದ್ಯಾರ್ಥಿಗಳಿಂದ ಶುಲ್ಕ ವಸೂಲು ಮಾಡಿ ಆಂತರಿಕವಾಗಿ ನಿಧಿ ಸಂಗ್ರಹಿಸುವ ಯೋಜನೆ, ಸಲಹಾ ಸೇವೆ ಮತ್ತು ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಿಗೆ ಸಂಬಂಧಿಸಿದ ಇತರ ಚಟುವಟಿಕೆಗಳಿಂದ ನಿರೀಕ್ಷಿತ ವರಮಾನಗಳು ಮತ್ತು ಇತರ ನಿರೀಕ್ಷಿತ ವರಮಾನಗಳು;

(x) ಘಟಕವೊಂದಕ್ಕೆ ತಗಲುವ ವೆಚ್ಚದ ವಿವರಗಳು, ಆರ್ಥಿಕವಾಗಿ ದುರ್ಬಲವಾದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕ, ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿ ವೇತನದಲ್ಲಿ ನೀಡುವ ರಿಯಾಯಿತಿ ಅಥವಾ ವಿನಾಯತಿಯ ಪರಿಮಿತಿಯ ವಿವರಗಳನ್ನು ಮತ್ತು ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳಿಗೆ ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳು ಪ್ರಾಯೋಜಿಸಿದ ವಿದ್ಯಾರ್ಥಿಗಳಿಗೆ ಮತ್ತು ಭಾರತವನ್ನುಳಿದು ಇತರ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ವಿಧಿಸತಕ್ಕ ಶುಲ್ಕದ ದರಗಳು ಬೇರೆ ಬೇರೆ ಇದ್ದಲ್ಲಿ ಅವುಗಳನ್ನು ಸೂಚಿಸುವ ಶುಲ್ಕ ರಚನೆಯ ವಿವರಗಳು;

(xi) ಸಂಬಂಧಪಟ್ಟ ವಿದ್ಯಾ ವಿಭಾಗದಲ್ಲಿ ಪ್ರಾಯೋಜಕ ಸೊಸೈಟಿಯು ದೊರಕಿಸಿಕೊಡಲಿರುವ ವರ್ಷಗಳ ಅನುಭವ ಮತ್ತು ಪರಿಣಿತಿ ಹಾಗೂ ಅದರ ಹಣಕಾಸಿನ ಸಂಪನ್ಮೂಲಗಳು;

(xii) ವಿಶ್ವವಿದ್ಯಾಲಯದಲ್ಲಿರುವ ಅಧ್ಯಯನ ಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕಾಗಿ ಇರುವ ವ್ಯವಸ್ಥೆ;

(xiii) ವಿಶ್ವವಿದ್ಯಾಲಯವು ಸ್ಥಾಪನೆಯಾಗುವುದಕ್ಕೆ ಮೊದಲು ನೆರವೇರಿಸಬೇಕೆಂದು ರಾಜ್ಯ ಸರ್ಕಾರವು ಅಗತ್ಯಪಡಿಸಬಹುದಾದ ಅಂಥ ಇತರ ಷರತ್ತುಗಳ ನೆರವೇರಿಕೆಯ ಹಂತ.

(4) ಪ್ರಾಯೋಜಕ ಸೊಸೈಟಿಯಿಂದ ಸ್ವೀಕರಿಸಿದ ಪ್ರಸ್ತಾವಗಳನ್ನು ಪರೀಕ್ಷಿಸಲು ರಾಜ್ಯ ಸರ್ಕಾರವು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಪದನಿಮಿತ್ತ ಸದಸ್ಯರಾದ ಮೂರು ಸದಸ್ಯರುಗಳನ್ನು ಒಳಗೊಂಡ ಒಂದು ಶೋಧನಾ ಸಮಿತಿಯನ್ನು ರಚಿಸತಕ್ಕದ್ದು ಮತ್ತು ಅದು ವಿಶ್ವವಿದ್ಯಾಲಯದ ಸ್ಥಾಪನೆಗೆ ರಾಜ್ಯ ಸರ್ಕಾರಕ್ಕೆ ಶಿಫಾರಸ್ಸನ್ನು ಮಾಡತಕ್ಕದ್ದು.

**4. ವಿಶ್ವವಿದ್ಯಾಲಯದ ಸ್ಥಾಪನೆ.**- (1) ರಾಜ್ಯ ಸರ್ಕಾರವು ಶೋಧನಾ ಸಮಿತಿಯು ಮಾಡಿದ ಶಿಫಾರಸ್ಸುಗಳನ್ನು ಪರಿಶೀಲಿಸಿದ ತರುವಾಯ ಮತ್ತು ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ,-

(i) ಸೊಸೈಟಿಯು ಸಾಕಷ್ಟು ಮೂಲ ಸೌಕರ್ಯದೊಂದಿಗೆ ವಿಶ್ವವಿದ್ಯಾಲಯವೊಂದನ್ನು ನಡೆಸಲು ಸಮರ್ಥವಾಗಿದೆ ಎಂದು ಅದು ಮನಗಂಡರೆ;

(ii) ಪ್ರದೇಶಕ್ಕನುಸಾರವಾಗಿ ಕೆಳಗೆ ನಿರ್ದಿಷ್ಟ ಪಡಿಸಿದ ವ್ಯಾಪ್ತಿಗೆ ಭೂಮಿಯ ಒಡೆತನವನ್ನು ಹೊಂದಿರತಕ್ಕದ್ದು, ಎಂದರೆ:-

(ಎ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯೊಳಗಿದ್ದರೆ ಇಪ್ಪತ್ತೈದು ಎಕರೆಗಳು;

(ಬಿ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯಿಂದ ಹೊರಗೆ ಇದ್ದು, ಆದರೆ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಪ್ರದೇಶದ ಒಳಗೆ ಇದ್ದರೆ ನಲವತ್ತು ಎಕರೆಗಳು;

(ಸಿ) ಭೂಮಿಯು (ಎ) ಮತ್ತು (ಬಿ) ಖಂಡಗಳಲ್ಲಿ ನಿರ್ದಿಷ್ಟಪಡಿಸಿದ ಸ್ಥಳಗಳನ್ನು ಹೊರತುಪಡಿಸಿದ್ದರೆ ಅರವತ್ತು ಎಕರೆಗಳಿಗಿಂತ ಕಡಿಮೆ ಇರತಕ್ಕದ್ದಲ್ಲ.

ಮೇಲೆ ನಿರ್ದಿಷ್ಟಪಡಿಸಿದ ಭೂಮಿಯು ಏಕ ಘಟಕ (ಸಿಂಗಲ್ ಬ್ಲಾಕ್) ದಲ್ಲಿರತಕ್ಕದ್ದು ಮತ್ತು ಇದು ಸಂಬಂಧಪಟ್ಟ ಸೊಸೈಟಿ ಅಥವಾ ನ್ಯಾಸ ಅಥವಾ ಪ್ರತಿಷ್ಠಾನ ಅಥವಾ ಸಂಸ್ಥೆ ಅಥವಾ ವಿಶ್ವವಿದ್ಯಾಲಯದ ಹೆಸರಿನಲ್ಲಿರತಕ್ಕದ್ದು. 3ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ಅಗತ್ಯಪಡಿಸಲಾದಂತೆ ಒದಗಿಸಿದ ವಿವರಗಳ ಆಧಾರದ ಮೇಲೆ ಸರ್ಕಾರವು 47ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಬೇಕೆಂದು ನ್ಯಾಸಕ್ಕೆ ನಿರ್ದೇಶನ ನೀಡಬಹುದು.

(2) ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಸ್ಥಾಪನೆಯ ತರುವಾಯ, ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, "ಅಮಿಟಿ ವಿಶ್ವವಿದ್ಯಾಲಯ" ಎಂಬ ಹೆಸರಿನ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ರಾಜ್ಯದಲ್ಲಿ ಸ್ಥಾಪಿಸುವುದಕ್ಕೆ ಮಂಜೂರಾತಿಯನ್ನು ನೀಡಬಹುದು.

(3) ವಿಶ್ವವಿದ್ಯಾಲಯದ ಕೇಂದ್ರ ಕಾರ್ಯಸ್ಥಾನವು ಬೆಂಗಳೂರಿನ ದೇವನಹಳ್ಳಿಯಲ್ಲಿ ಇರತಕ್ಕದ್ದು. ವಿಶ್ವವಿದ್ಯಾಲಯದ ಸ್ಥಾಪನೆಯ ಐದು ವರ್ಷಗಳ ತರುವಾಯ ವಿಶ್ವವಿದ್ಯಾಲಯವು ತನ್ನ ಕ್ಯಾಂಪಸ್ಸುಗಳನ್ನು ಅಥವಾ ಪ್ರಾದೇಶಿಕ ಕೇಂದ್ರಗಳನ್ನು, ಅಧ್ಯಯನ ಕೇಂದ್ರಗಳನ್ನು ಕರ್ನಾಟಕದ ಯಾವುದೇ ಭಾಗದಲ್ಲಿ ಹೊಂದಿರತಕ್ಕದ್ದು ಮತ್ತು ಆ ಬಗ್ಗೆ ರಾಜ್ಯ ಸರ್ಕಾರದ ಪೂರ್ವಾನುಮತಿಯನ್ನು ಪಡೆದುಕೊಳ್ಳುವುದಕ್ಕೊಳಪಟ್ಟು ಹಾಗೂ ವಿಶ್ವವಿದ್ಯಾಲಯ ಅನುದಾನಗಳ ಆಯೋಗದ ಗುಣಮಟ್ಟಗಳಿಗನುಸಾರವಾಗಿ ಹೊಂದಿರತಕ್ಕದ್ದು.

(4) ಮೊದಲ ಕುಲಾಧಿಪತಿಯವರು, ಮೊದಲ ಕುಲಪತಿಯವರು, ಪ್ರಬಂಧಕ ಮಂಡಳಿಯ ಮೊದಲ ಸದಸ್ಯರುಗಳು, ವ್ಯವಸ್ಥಾಪನಾ ಮಂಡಳಿಯ ಹಾಗೂ ಶೈಕ್ಷಣಿಕ ಪರಿಷತ್ತಿನ ಮೊದಲ ಸದಸ್ಯರುಗಳು ಮತ್ತು ಇನ್ನು ಮುಂದೆ, ಅಂಥ ಅಧಿಕಾರಿಗಳು ಅಥವಾ ಸದಸ್ಯರುಗಳಾಗಬಹುದಾದಂಥ ಎಲ್ಲಾ ವ್ಯಕ್ತಿಗಳು, ಅಂಥ ಪದ ಅಥವಾ ಸದಸ್ಯತ್ವವನ್ನು ಹೊಂದಿರುವುದು ಮುಂದುವರೆಯುವವರೆಗೆ, ಒಂದು ನಿಗಮಿತ ನಿಕಾಯವನ್ನು ರಚಿಸತಕ್ಕದ್ದು. ಮತ್ತು ಅದು ವಿಶ್ವವಿದ್ಯಾಲಯದ ಹೆಸರಿನಲ್ಲಿ ದಾವೆ ಹೂಡಬಹುದು ಮತ್ತು ದಾವೆಗೊಳಗಾಗಬಹುದು.

(5) (2)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯವು ಸ್ಥಾಪನೆಗೆ ಮಂಜೂರಾತಿಯಾದ ಮೇಲೆ, ವಿಶ್ವವಿದ್ಯಾಲಯದ ಉದ್ದೇಶಕ್ಕಾಗಿ, ನ್ಯಾಸವು ಆರ್ಜಿಸಿದ, ಸೃಜಿಸಿದ, ಏರ್ಪಾಟು ಮಾಡಿಕೊಂಡ ಅಥವಾ ಕಟ್ಟಲ್ಪಟ್ಟ ಭೂಮಿ ಮತ್ತು ಇತರ ಸ್ಥಿರ ಮತ್ತು ಚರ ಸ್ವತ್ತು, ವಿಶ್ವವಿದ್ಯಾಲಯದಲ್ಲಿ ನಿಹಿತವಾಗಿರತಕ್ಕದ್ದು.

(6) ವಿಶ್ವವಿದ್ಯಾಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದ ಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂಥ ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

(7) ವಿಶ್ವವಿದ್ಯಾಲಯದಲ್ಲಿನ ಭೂಮಿ, ಕಟ್ಟಡ ಮತ್ತು ಇತರ ಸ್ವತ್ತುಗಳನ್ನು ವಿಶ್ವವಿದ್ಯಾಲಯದ ಉದ್ದೇಶಗಳಿಗೆ ಆನುಷಂಗಿಕವಾಗಿರುವುದನ್ನು ಹೊರತುಪಡಿಸಿ ಇತರ ಯಾವುದೇ ಉದ್ದೇಶಕ್ಕಾಗಿ ಬಳಸತಕ್ಕದ್ದಲ್ಲ.

**5. ಅನುದಾನಗಳು ಮತ್ತು ಹಣಕಾಸು ನೆರವು.**- ವಿಶ್ವವಿದ್ಯಾಲಯವು ಸ್ವಂತ ಧನಮೂಲವುಳ್ಳ ಲಾಭರಹಿತ ಸಂಸ್ಥೆಯಾಗಿರತಕ್ಕದ್ದು ರಾಜ್ಯದಿಂದ ಅಥವಾ ರಾಜ್ಯದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಇತರ ಸಂಸ್ಥೆ ಅಥವಾ ನಿಗಮದಿಂದ ಯಾವುದೇ ನಿರ್ವಹಣಾ ಸಹಾಯ ಅನುದಾನ ಅಥವಾ ಯಾವುದೇ ಹಣಕಾಸು ನೆರವನ್ನು ಹಕ್ಕಿನಿಂದ ಕೇಳತಕ್ಕದ್ದಲ್ಲ ಅಥವಾ ಅದನ್ನು ಪಡೆಯಲು ಹಕ್ಕನ್ನು ಹೊಂದಿರತಕ್ಕದ್ದಲ್ಲ:

ಪರಂತು, ರಾಜ್ಯವು,-

(ಎ) ಇತರ ರಾಜ್ಯ ಸರ್ಕಾರದ ಸಂಘಟನೆಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿರುವಂಥದ್ದೇ ಸಂಶೋಧನೆ, ಅಭಿವೃದ್ಧಿ ಮತ್ತಿತರ ಚಟುವಟಿಕೆಗಳಿಗಾಗಿ; ಅಥವಾ

(ಬಿ) ರಾಜ್ಯ ಸರ್ಕಾರದಿಂದ ನೆರವನ್ನು ಪಡೆಯುವ ಯಾವುದೇ ನಿರ್ದಿಷ್ಟ ಸಂಶೋಧನೆ ಅಥವಾ ಕಾರ್ಯಕ್ರಮಗಳಿಗಾಗಿ; ಮತ್ತು

(ಸಿ) ರಾಜ್ಯ ಕಾರ್ಯನೀತಿಯ ಬದಲಾವಣೆಗೆ ಒಳಪಟ್ಟು ಅಥವಾ ಅನ್ಯಥಾ ಇದೇ ಬಗೆಯ ವಿಶ್ವವಿದ್ಯಾಲಯಗಳಿಗೆ ಅವಕಾಶವನ್ನು ಕಲ್ಪಿಸುವುದಕ್ಕೆ ಅಥವಾ ಅವುಗಳ ಪ್ರಯೋಜನಕ್ಕಾಗಿ,

– ಅನುದಾನದ ಮೂಲಕ ಅಥವಾ ಅನ್ಯಥಾ ಹಣಕಾಸು ಬೆಂಬಲವನ್ನು ಒದಗಿಸಬಹುದು:

ಮತ್ತು ಪರಂತು, ವಿಶ್ವವಿದ್ಯಾಲಯವು, ಯಾವುದೇ ಇತರ ಮೂಲದಿಂದ ಯಾವುದೇ ಆರ್ಥಿಕ ನೆರವನ್ನು ಸ್ವೀಕರಿಸಬಹುದು.

**6. ಘಟಕ ಕಾಲೇಜು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಅಥವಾ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದಕ್ಕೆ ಅಧಿಕಾರ.**– ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಐದು ವರ್ಷಗಳನ್ನು ಪೂರ್ಣಗೊಳಿಸಿದ ನಂತರ, ವಿಶ್ವವಿದ್ಯಾಲಯ ಅನುದಾನ ಆಯೋಗದ ಮತ್ತು ಇತರ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ಗುಣಮಟ್ಟಗಳಿಗೆ ಒಳಪಟ್ಟು, ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ, ವಿಶ್ವವಿದ್ಯಾಲಯವು, ರಾಜ್ಯದಲ್ಲಿ ತನಗೆ ಸೂಕ್ತವೆನಿಸುವಂಥ ಸ್ಥಳಗಳಲ್ಲಿ ಘಟಕ ಕಾಲೇಜುಗಳು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದಿರಬಹುದು.

**7. ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು.**– ವಿಶ್ವವಿದ್ಯಾಲಯವು, ತನ್ನ ಭವಿಷ್ಯದ್‌ದೃಷ್ಟಿ ಮತ್ತು ಧ್ಯೇಯೋದ್ದೇಶಗಳನ್ನು ಸಾಧಿಸಲು ಈ ಮುಂದಿನಂತೆ ವಿವಿಧ ಬಗೆಯ ಕಾರ್ಯತಂತ್ರಗಳನ್ನು ಕೈಗೊಳ್ಳಬಹುದು:–

(i) ಜ್ಞಾನ ಸಮುದಾಯವನ್ನು ಸೃಜಿಸುವಲ್ಲಿ ಸಾಮಾಜಿಕವಾಗಿ ಸಂಗತವಾಗುವ ಅಗತ್ಯಗಳನ್ನು ಗಮನದಲ್ಲಿರಿಸಿ ಸಂಶೋಧನೆ ಮತ್ತು ಬೋಧನೆಯನ್ನು ನಡೆಸುವುದು ;

(ii) ಕಲೆ, ವಿಜ್ಞಾನ, ವಾಣಿಜ್ಯ, ಕಾನೂನು, ಇಂಜಿನಿಯರಿಂಗ್, ಮಾನವಿಕಗಳು, ತಂತ್ರಜ್ಞಾನ, ಔಷಧಶಾಸ್ತ್ರ, ಭಾಷೆಗಳು, ವೈದ್ಯಕೀಯ ಮತ್ತು ಸಂಬಂಧಿತ ಆರೋಗ್ಯ ಶಿಕ್ಷಣ, ವಾಸ್ತುಶಿಲ್ಪ, ವ್ಯವಸ್ಥಾಪನೆ ಮತ್ತು ರಾಜ್ಯ ~~ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಟ್ರಸ್ಟಿಗಳು ಸೂಕ್ತವೆಂದು ಭಾವಿಸಬಹುದಾದ ಅಂಥ ಇತರ~~ ಉದ್ದೇಶಗಳಲ್ಲಿ ಡಿಪ್ಲೋಮಾ, ಸ್ನಾತಕಪೂರ್ವ, ಸ್ನಾತಕೋತ್ತರ, ಡಾಕ್ಟೊರಲ್ ಮತ್ತು ಪೋಸ್ಟ್ ಡಾಕ್ಟೊರಲ್ ಕೋರ್ಸುಗಳನ್ನು ಒಳಗೊಳ್ಳುವ ವಿಶ್ವವಿದ್ಯಾಲಯ ಶಿಕ್ಷಣದಲ್ಲಿ ಪ್ರಗತಿಯನ್ನು ಮತ್ತು ಅನ್ವೇಷಣೆಯನ್ನು ಬೆಂಬಲಿಸುವುದು, ಪ್ರೋತ್ಸಾಹಿಸುವುದು ಮತ್ತು ಕೈಗೊಳ್ಳುವುದು;

(iii) ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ವಿಶ್ವವಿದ್ಯಾನಿಲಯ ಅನುದಾನಗಳ ಆಯೋಗದ ಪ್ರಮಾಣಕಗಳ ಅನುಸಾರವಾಗಿ ಶೈಕ್ಷಣಿಕ ಬದಲಾವಣೆ ಮತ್ತು ಸಾಮಾಜಿಕ ಹಾಗೂ ಮಾನವ ಅಭಿವೃದ್ಧಿಗೆ ಕೊಡುಗೆ ನೀಡಲು ಮತ್ತು ಅಭಿವೃದ್ಧಿ ಪಡಿಸಲು ಮತ್ತು ಗೊತ್ತುಪಡಿಸಲು ಕರ್ನಾಟಕದಲ್ಲಿ ವಿವಿಧ ಸ್ಥಳಗಳಲ್ಲಿ ಕ್ಯಾಂಪಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳು ಮತ್ತು ಘಟಕ ಕಾಲೇಜುಗಳನ್ನು ಸ್ಥಾಪಿಸುವುದು ;

(iv) ಉದ್ಯಮಶೀಲತೆ ಮತ್ತು ಔದ್ಯಮಿಕ ಶೋಧನೆ ಕ್ಷೇತ್ರಗಳಲ್ಲಿ ನೆಲೆಯನ್ನು ರೂಪಿಸುವುದು ಹಾಗೂ ಜೊತೆದಾರ ಕಂಪನಿಗಳಿಗೆ ಕಾರ್ಯತಂತ್ರದ ಸಲಹೆಗಳನ್ನು ನೀಡುವುದನ್ನು ಒಳಗೊಂಡು ವಿಷಯ ಅಧ್ಯಯನಗಳನ್ನು ಅಭಿವೃದ್ಧಿಪಡಿಸುವುದು :

(v) ಮೌಲ್ಯಮಾಪನದ ವಿವಿಧ ಆಧುನಿಕ ವಿಧಾನಗಳ ಮೂಲಕ ಮಾಡಿದ ಮೌಲ್ಯಮಾಪನಕ್ಕೆ ಅನುಸಾರವಾಗಿ ಶಿಕ್ಷಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದುದರ ಆಧಾರದ ಮೇಲೆ ನೀಡಲು ಪದವಿಗಳನ್ನು, ಡಿಪ್ಲೋಮೋಗಳನ್ನು, ಪ್ರಮಾಣಪತ್ರಗಳನ್ನು ಮತ್ತು ಯಶೋಪತ್ರ ಪ್ರದಾನದಂಥ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(vi) ವಿದ್ಯಾರ್ಥಿಗಳಿಗೆ, ಬೋಧಕ ವೃಂದದ (ಫ್ಯಾಕಲ್ಟಿ) ಸದಸ್ಯರಿಗೆ ಮತ್ತು ಇತರರಿಗೆ ನಿರ್ದಿಷ್ಟ ಶೈಕ್ಷಣಿಕ ಮತ್ತು ಸಂಶೋಧನಾ ಕಾರ್ಯಕ್ರಮಗಳನ್ನು, ತರಬೇತಿ ಕಾರ್ಯಕ್ರಮಗಳನ್ನು ಮತ್ತು ವಿನಿಮಯ ಕಾರ್ಯಕ್ರಮಗಳನ್ನು ಪರಿಕಲ್ಪಿಸಲು, ವಿನ್ಯಾಸಗೊಳಿಸಲು, ಅಭಿವೃದ್ಧಿಪಡಿಸಲು ಇತರ ಯಾವುದೇ ವಿಶ್ವವಿದ್ಯಾಲಯಗಳು, ಸಂಶೋಧನಾ ಸಂಸ್ಥೆಗಳು, ಲಾಭರಹಿತ ಸಂಸ್ಥೆಗಳು, ಕೈಗಾರಿಕಾ ಸಂಸ್ಥೆಗಳು, ವೃತ್ತಿಪರ ಸಂಸ್ಥೆಗಳು ಅಥವಾ ಇತರ ಸಂಸ್ಥೆಗಳೊಂದಿಗೆ ಸಹಯೋಗವನ್ನು ಹೊಂದುವುದು;

(vii) ರಾಜ್ಯ ಸರ್ಕಾರದ ಪೂರ್ವ ಅನುಮೋದನೆಯೊಂದಿಗೆ, ಉತ್ತಮ ಗುಣಮಟ್ಟದ ಇತರ ಯಾವುವೇ ವಿಶ್ವವಿದ್ಯಾಲಯಗಳೊಂದಿಗೆ ಸಹಭಾಗಿಗಳಾಗಿ ವಿಶ್ವವಿದ್ಯಾಲಯದ ಬೋಧಕ ವೃಂದ (ಫ್ಯಾಕಲ್ಟಿ) ಮತ್ತು ಸಂಶೋಧಕರ ಅಭಿವೃದ್ಧಿ ಮತ್ತು ತರಬೇತಿಗಾಗಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು;

(viii) ರಾಜ್ಯ ಸರ್ಕಾರದ ಪೂರ್ವ ಅನುಮೋದನೆಯೊಡನೆ, ಯಾವುದೇ ಸಂಸ್ಥೆಯೊಂದಿಗೆ ಸಹಯೋಗ ಹೊಂದಿ ಸಂಶೋಧನೆಯನ್ನು ಮತ್ತು ಹೊಸತನವನ್ನು ಬೆಳಕಿಗೆ ತರುವುದು;

(ix) ತೊಂದರೆ ನಿವಾರಣೆ ಸಾಮೀಪ್ಯ ಮತ್ತು ಸೃಜನಶೀಲತೆಯ ನವೀನ್ಯತೆಯನ್ನು ಉತ್ತೇಜಿಸಲು ವಿದ್ಯಾರ್ಥಿಗಳನ್ನು ಸಂಶೋಧನೆಯಲ್ಲಿ ತೊಡಗಿಸುವುದು ;

(x) ಉನ್ನತ ಕಲಿಕೆಗೆ ಪ್ರವೇಶಾವಕಾಶಗಳನ್ನು ಮತ್ತು ನ್ಯಾಯಸಮ್ಮತತೆಗೆ ಉತ್ತೇಜನ ನೀಡುವ ದೃಷ್ಟಿಯಿಂದ, ಕಲಿಕೆಯ ವಿಧಾನಗಳು ಮತ್ತು ಸ್ಥಳಗಳು, ವ್ಯಾಸಂಗ ಕ್ರಮಗಳ ಸಂಯೋಜನೆ, ದಾಖಲಾತಿಗಾಗಿ ಅರ್ಹತೆ, ಪ್ರವೇಶದ ವಯಸ್ಸು, ಪರೀಕ್ಷೆಯನ್ನು ನಡೆಸುವುದು ಮತ್ತು ಕಾರ್ಯಕ್ರಮಗಳ ನಿರ್ವಹಣೆಗೆ ಸಂಬಂಧಿಸಿದಂತೆ ನಮ್ಯವಾದ (ಫ್ಲೆಕ್ಸಿಬಲ್) ಮತ್ತು ಮುಕ್ತವಾದ, ವಿಶ್ವವಿದ್ಯಾಲಯ ಮಟ್ಟದ ಶಿಕ್ಷಣದ ಅನ್ವೇಷಣಾ ಪದ್ಧತಿಯನ್ನು ಅಳವಡಿಸುವುದು ಹಾಗೂ ಜ್ಞಾನದ ಹೊಸ ಕ್ಷೇತ್ರಗಳಲ್ಲಿ ಉತ್ಕೃಷ್ಟತೆಗೆ ಪ್ರೋತ್ಸಾಹಿಸುವುದು, ಶೈಕ್ಷಣಿಕ ಮತ್ತು ಸಮನ್ವಯ ಕಲಿಕೆ, ಇವೆರಡಕ್ಕೂ ಸಮನಾದ ಪ್ರಾಮುಖ್ಯತೆಯನ್ನು ನೀಡುವುದು;

(xi) ಅದರ ನೀತಿಗಳು ಮತ್ತು ಕಾರ್ಯಕ್ರಮಗಳ ಮೂಲಕ ರಾಷ್ಟ್ರೀಯ ಭಾವೈಕ್ಯತೆ ಮತ್ತು ಮಾನವ ವ್ಯಕ್ತಿತ್ವದ ಸಂಯೋಜಿತ ಅಭಿವೃದ್ಧಿಯನ್ನು ಉತ್ತೇಜಿಸುವುದು;

(xii) ಖಾಯಿಲೆ ಗುಣಪಡಿಸುವಿಕೆ, ಪರಿಸರ ರಕ್ಷಣೆ ಮತ್ತು ಸುಧಾರಣೆ, ನವೀಕರಿಸಬಹುದಾದ ಇಂಧನ, ದಕ್ಷ ಔದ್ಯಮಿಕ ಪದ್ಧತಿಗಳು, ವ್ಯವಹಾರ ನಿರ್ವಹಣೆ ಮತ್ತು ಸಮಾಜೋ-ಆರ್ಥಿಕ ಅಭಿವೃದ್ಧಿ ಕ್ಷೇತ್ರಗಳಲ್ಲಿ ಆದರೆ ಅವುಗಳಿಗೆ ಸೀಮಿತಗೊಳ್ಳದ ಅಂಥ ತೊಂದರೆಗಳನ್ನು ನಿವಾರಿಸಲು ವಿವಿಧ ವಿಷಯಗಳಲ್ಲಿ ವಿವಿಧ ಸಂಶೋಧನಾ ಕಾರ್ಯಕ್ರಮಗಳನ್ನು ಉತ್ತೇಜಿಸುವುದು ಮತ್ತು ಕೈಗೊಳ್ಳುವುದು;

(xiii) ಕೌಶಲ್ಯ ನಿರ್ವಹಣೆಗಾಗಿ ಇರುವ ಉದ್ಯಮಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಜನರ ಶಿಕ್ಷಣದ ಮುಂದುವರಿಕೆಗಾಗಿ ಕಾರ್ಯಕ್ರಮಗಳನ್ನು ವಿನ್ಯಾಸಗೊಳಿಸುವುದು;

(xiv) ಔದ್ಯಮಿಕ ಯೋಜನೆಗಳಲ್ಲಿ ವಿದ್ಯಾರ್ಥಿಗಳು ಮತ್ತು ಫ್ಯಾಕಲ್ಟಿಗಳನ್ನು ತೊಡಗಿಸುವುದು;

(xv) ಕಾರ್ಯಯೋಜನೆಗಳನ್ನು ಸಮಾಲೋಚಿಸುವ ಮೂಲಕ ಉದ್ಯಮಗಳ ಉತ್ಪತ್ತಿಗೆ ಕೊಡುಗೆ ನೀಡುವುದು;

(xvi) ಬೋಧನೆ ಮತ್ತು ಸಹಯೋಗಗಳ ಮೂಲಕ ವಿದ್ಯಾರ್ಥಿಗಳು, ವಿದ್ಯಾರ್ಥಿ ಸಂಘಗಳು ಮತ್ತು ಉದ್ಯಮ ಪಾಲುದಾರರಲ್ಲಿ ಉದ್ಯಮಶೀಲತೆಯನ್ನು ಉತ್ತೇಜಿಸುವುದು;

(xvii) ವಿಚಾರ ಸಂಕಿರಣಗಳು, ಕಾರ್ಯಗಾರಗಳು, ಚರ್ಚಾಗೋಷ್ಠಿಗಳು, ಚರ್ಚೆಗಳು, ಸಮ್ಮೇಳನಗಳು, ಮುಂದುವರಿಕೆ ಶಿಕ್ಷಣ ಕಾರ್ಯಕ್ರಮಗಳು, ಸಮುದಾಯ ಕಾರ್ಯಕ್ರಮಗಳು, ಪ್ರಕಟಣೆಗಳು, ತರಬೇತಿ ಕಾರ್ಯಕ್ರಮಗಳು ಮತ್ತು ಉದ್ಯಮ ಶೀಲತೆಯ ಮೂಲಕ ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಪ್ರಾಮುಖ್ಯತೆಯ ವಿಷಯಗಳ ಮೇಲೆ ಸಾರ್ವಜನಿಕರನ್ನು ಮತ್ತು ಖಾಸಗಿ ಉಪಕ್ರಮಗಳನ್ನು ಜಾಗೃತಿ ಮೂಡಿಸುವುದು ಮತ್ತು ಸ್ಫೂರ್ತಿ ನೀಡುವುದು;

(xviii) ಬೋಧನೆ, ಕಲಿಕೆ ಮತ್ತು ಉದಾಹರಣೆಗಳನ್ನು ನೀಡುವ ಮೂಲಕ ಸಾಮಾಜಿಕ ಉದ್ಯಮಶೀಲತಾ ಕಾರ್ಯಕ್ರಮಗಳನ್ನು ಅಭಿವೃದ್ಧಿಗೊಳಿಸುವುದು;

(xix) ಸಮಾಜದ ಗ್ರಾಮೀಣ ಮತ್ತು ನಗರ ಶಾಖೆಗಳನ್ನು ಬೆಳೆಸಲು ಸೂಕ್ತ ಅಭಿವೃದ್ಧಿ ಚಟುವಟಿಕೆಗಳನ್ನು ಕೈಗೊಳ್ಳುವುದು;

(xx) ಜಾಗತಿಕ ಜ್ಞಾನವನ್ನು ಸಂಗ್ರಹಿಸುವ ಮೂಲಕ ಕ್ಲಿಷ್ಟ ಸಮಸ್ಯೆಗಳನ್ನು ನಿವಾರಿಸಲು ಅಭಿವೃದ್ಧಿ ಹೊಂದುತ್ತಿರುವ, ಅಭಿವೃದ್ಧಿ ಹೊಂದದಿರುವ ಮತ್ತು ಅಭಿವೃದ್ಧಿ ಹೊಂದಿರುವ ರಾಷ್ಟ್ರಗಳೊಂದಿಗೆ ಸಹಯೋಗ ಹೊಂದುವುದು.

**8. ವಿಶ್ವವಿದ್ಯಾಲಯದ ಅಧಿಕಾರಗಳು.–** ವಿಶ್ವವಿದ್ಯಾಲಯವು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗೆ ಅನುಸಾರವಾಗಿ ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿರ್ಧರಿಸಬಹುದಾದಂತೆ ವಿಶ್ವವಿದ್ಯಾಲಯದ ಸ್ಥಾಪನೆಯ ದಿನಾಂಕದಿಂದ ಐದು ವರ್ಷಗಳ ತರುವಾಯ ಕ್ಯಾಂಪಸ್ಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಕರ್ನಾಟಕದಲ್ಲಿ ಸ್ಥಾಪಿಸುವುದು ಮತ್ತು ನಿರ್ವಹಿಸುವುದು;

(ii) ವಿಶ್ವವಿದ್ಯಾಲಯದ ಉದ್ದೇಶವನ್ನು ಕಾರ್ಯರೂಪಕ್ಕೆ ತರುವಲ್ಲಿ ಅಗತ್ಯವಾಗಬಹುದಾದ ಅಥವಾ ಕಾರ್ಯಸಾಧ್ಯವಾಗಬಹುದಾದ ಎಲ್ಲಾ ಅಂಥ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು;

(iii) ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಮತ್ತು ಷರತ್ತುಗಳಿಗೊಳಪಟ್ಟು ಪದವಿಗಳು ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರದಾನಮಾಡುವುದು;

(iv) ಪರಿನಿಯಮಗಳನ್ವಯ ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿ ವೇತನಗಳು ಮತ್ತು ಬಹುಮಾನಗಳು, ಅವಾರ್ಡುಗಳು, ಪಾರಿತೋಷಕಗಳು ಇತ್ಯಾದಿಗಳನ್ನು ಸ್ಥಾಪಿಸುವುದು ಮತ್ತು ನೀಡುವುದು;

(v) ಪರಿನಿಯಮಗಳಲ್ಲಿ ಅಥವಾ ಸಂದರ್ಭಾನುಸಾರವಾಗಿ ನಿಯಮಗಳಲ್ಲಿ ನಿಗದಿಪಡಿಸಬಹುದಾದ ಅಂಥ ಶುಲ್ಕಗಳು, ಬಿಲ್ಲುಗಳು, ಖರೀದಿ ಪಟ್ಟಿಗಳನ್ನು ಕೇಳಿಪಡೆದುಕೊಳ್ಳುವುದು ಮತ್ತು ಸ್ವೀಕರಿಸುವುದು ಹಾಗೂ ಚಾರ್ಜುಗಳನ್ನು ವಸೂಲು ಮಾಡುವುದು;

(vi) ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಪಠ್ಯೇತರ ಚಟುವಟಿಕೆಗಳಿಗೆ ಅವಕಾಶಗಳನ್ನು ಕಲ್ಪಿಸುವುದು;

(vii) ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಕ್ಯಾಂಪಸುಗಳ, ಪ್ರಾದೇಶಿಕ ಕೇಂದ್ರಗಳ, ಅಧ್ಯಯನ ಕೇಂದ್ರಗಳ ಫ್ಯಾಕಲ್ಟಿ, ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವುದು;

(viii) ವಿಶ್ವವಿದ್ಯಾಲಯದ ಅಥವಾ ಒಂದು ಘಟಕ ಕಾಲೇಜಿನ ಅಥವಾ ಕ್ಯಾಂಪಸ್ಸಿನ, ಪ್ರಾದೇಶಿಕ ಕೇಂದ್ರದ ಮತ್ತು ಅಧ್ಯಯನ ಕೇಂದ್ರದ ಉದ್ದೇಶಕ್ಕಾಗಿ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದಿರುವ, ಯಾವುದೇ ರೀತಿಯ ಸ್ವಯಂ ದೇಣಿಗೆಗಳು ಮತ್ತು ಕೊಡುಗೆಗಳನ್ನು ಸ್ವೀಕರಿಸುವುದು ಮತ್ತು ನ್ಯಾಸ ಮತ್ತು ದತ್ತಿ ಸ್ವತ್ತುಗಳೂ ಸೇರಿದಂತೆ, ಯಾವುದೇ ಚರ ಅಥವಾ ಸ್ಥಿರ ಸ್ವತ್ತನ್ನು ಆರ್ಜಿಸುವುದು, ಹೊಂದಿರುವುದು, ನಿರ್ವಹಿಸುವುದು, ನಡೆಸುವುದು ಮತ್ತು ಹಸ್ತಾಂತರ ಮಾಡುವುದು;

(ix) ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸಿಕೊಂಡು ಬರುವುದು ಹಾಗೂ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ ವಿದ್ಯಾರ್ಥಿಗಳಿಗೆ ವಸತಿ ಸ್ಥಳಗಳಾಗಿ ಮಾನ್ಯತೆ ನೀಡುವುದು;

(x) ವಸತಿಯ ಮೇಲ್ವಿಚಾರಣೆ ಮಾಡುವುದು ಮತ್ತು ನಿಯಂತ್ರಣ ಮಾಡುವುದು ಹಾಗೂ ವಿದ್ಯಾರ್ಥಿಗಳು ಮತ್ತು ಎಲ್ಲಾ ಪ್ರವರ್ಗಗಳ ಸಿಬ್ಬಂದಿಗಳಲ್ಲಿ ಶಿಸ್ತು ನಿಯಂತ್ರಣ ಮಾಡುವುದು ಮತ್ತು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ನಡತೆ ಸಂಹಿತೆಯನ್ನು ರೂಪಿಸುವುದೂ ಒಳಗೊಂಡಂತೆ, ಅಂಥ ಸಿಬ್ಬಂದಿಗಳ ಸೇವಾಷರತ್ತುಗಳನ್ನು ನಿರೂಪಿಸುವುದು;

(xi) ಶೈಕ್ಷಣಿಕ, ಆಡಳಿತಾತ್ಮಕ ಮತ್ತು ಬೆಂಬಲ ಸಿಬ್ಬಂದಿಯ ಹುದ್ದೆಗಳನ್ನು ಮತ್ತು ಇತರ ಅವಶ್ಯ ಹುದ್ದೆಗಳನ್ನು ಸೃಜಿಸುವುದು;

(xii) ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ಉದ್ದೇಶಗಳಿಗಾಗಿ ಇತರ ವಿಶ್ವವಿದ್ಯಾಲಯಗಳೊಡನೆ ಸಹಕರಿಸುವುದು ಮತ್ತು ಸಹಯೋಗ ಹೊಂದುವುದು;

(xiii) ಶಿಕ್ಷಕರಿಗೆ, ಪಾಠಗಳನ್ನು ರಚಿಸುವವರಿಗೆ, ಮೌಲ್ಯಮಾಪಕರಿಗೆ ಮತ್ತಿತರ ಶೈಕ್ಷಣಿಕ ಸಿಬ್ಬಂದಿಗೆ ಪುನರ್ಮನನ ವ್ಯಾಸಂಗಕ್ರಮಗಳು, ಅಭಿಮುಖ ವ್ಯಾಸಂಗ ಕ್ರಮಗಳು, ಕಾರ್ಯಾಗಾರಗಳು, ವಿಚಾರಗೋಷ್ಠಿಗಳು ಮತ್ತಿತರ ಕಾರ್ಯಕ್ರಮಗಳನ್ನು ಏರ್ಪಡಿಸುವುದು ಮತ್ತು ನಡೆಸುವುದು;

(xiv) ಶೈಕ್ಷಣಿಕ ಪರಿಷತ್ತಿನ ಅನುಮೋದನೆಯೊಂದಿಗೆ ವಿಶ್ವವಿದ್ಯಾಲಯಕ್ಕೆ ಅಥವಾ ಘಟಕ ಕಾಲೇಜಿಗೆ, ಪ್ರಾದೇಶಿಕ ಕೇಂದ್ರಗಳಿಗೆ, ಅಧ್ಯಯನ ಕೇಂದ್ರಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮತ್ತು ಈ ಅಧಿನಿಯಮದಲ್ಲಿ ಕಲ್ಪಿಸಿದ ವ್ಯಾಪ್ತಿಗಿಂತ ಕಡಿಮೆಯಿಲ್ಲದಂತೆ ಕರ್ನಾಟಕದ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮಾನಕ ಗುಣಮಟ್ಟಗಳನ್ನು ನಿರ್ಧರಿಸುವುದು;

(xv) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಕಾರ್ಯರೂಪಕ್ಕೆ ತರಲು ಅವಶ್ಯವಾಗಬಹುದಾದಂಥ ಇತರ ಎಲ್ಲಾ ಕ್ರಮಗಳನ್ನು ಅಥವಾ ಕಾರ್ಯಗಳನ್ನು, ಅವು ಮೇಲೆ ಹೇಳಿದ ಅಧಿಕಾರಗಳಿಗೆ ಪ್ರಾಸಂಗಿಕವಾಗಿರಲಿ ಅಥವಾ ಇಲ್ಲದಿರಲಿ, ಕೈಗೊಳ್ಳುವುದು;

(xvi) ಪರೀಕ್ಷೆಗಳ ಆಧಾರದ ಮೇಲೆ ಅಥವಾ ಸರ್ಕಾರದಿಂದ ಅನುಮೋದಿತವಾದ ಇತರ ಯಾವುದೇ ಮೌಲ್ಯಮಾಪನ ವಿಧಾನದ ಆಧಾರದ ಮೇಲೆ ನೀಡಲು ಪದವಿಗಳು, ಡಿಪ್ಲೋಮಾಗಳು, ಪ್ರಮಾಣಪತ್ರಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಸ್ಥಾಪಿಸುವುದು;

(xvii) ಫಿಲಂಗಳು, ಕ್ಯಾಸೆಟ್‌ಗಳು, ಧ್ವನಿಸುರುಳಿಗಳು, ದೃಶ್ಯಸುರುಳಿಗಳು, ಸಿ.ಡಿ., ವಿ.ಸಿ.ಡಿ. ಮತ್ತು ಇತರ ತಂತ್ರಾಂಶಗಳೂ ಹಾಗೂ ಇತರ ಸಂಬಂಧಿತ ವಿದ್ಯುನ್ಮಾನ ಮತ್ತು ಮುದ್ರಣ ಮಾಧ್ಯಮ ಸೇರಿದಂತೆ ಬೋಧಕ ಸಾಮಗ್ರಿಗಳನ್ನು ತಯಾರಿಸುವುದಕ್ಕಾಗಿ ಅವಕಾಶ ಕಲ್ಪಿಸುವುದು;

(xviii) ಪ್ರಬಂಧಕ ಮಂಡಳಿಯ ಅನುಮೋದನೆಯೊಡನೆ ವಿಶ್ವವಿದ್ಯಾಲಯದ ಉದ್ದೇಶಗಳಿಗಾಗಿ ವಿಶ್ವವಿದ್ಯಾಲಯದ ಸ್ವತ್ತುಗಳನ್ನು ಭದ್ರತೆಯಾಗಿ ನೀಡಿ ಅಥವಾ ನೀಡದೆ ಹಣವನ್ನು ಪಡೆಯುವುದು, ಸಂಗ್ರಹಿಸುವುದು, ಚಂದಾದಾರರಾಗುವುದು ಮತ್ತು ಸಾಲ ಪಡೆಯುವುದು;

(xix) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುದೇ ಇತರ ಶೈಕ್ಷಣಿಕ ಸಂಸ್ಥೆಗಳ ಆಡಳಿತವನ್ನು ವಶಪಡಿಸಿಕೊಳ್ಳುವುದು, ವಹಿಸಿಕೊಳ್ಳುವುದು ಮತ್ತು ನಡೆಸುವುದು;

(xx) ಕಾರ್ಯಕಾರಿ ಪರಿಷತ್ತು ಪೂರ್ವಾನುಮೋದನೆಯೊಂದಿಗೆ ಸ್ವತ್ತುಗಳನ್ನು ಆರ್ಜಿಸುವುದು;

(xxi) ವಿಶ್ವವಿದ್ಯಾಲಯದ ಮೇಲಿನ ಉದ್ದೇಶಗಳಿಗೆ ಸಂಬಂಧಿಸಿದ ಅಥವಾ ಪ್ರಾಸಂಗಿಕವಾದ ಯಾವುದೇ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು.

9. **ವಿಶ್ವವಿದ್ಯಾಲಯವು ಎಲ್ಲಾ ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲರಿಗೂ ಮುಕ್ತವಾಗಿರತಕ್ಕದ್ದು.**– ವಿಶ್ವವಿದ್ಯಾಲಯದ ಪ್ರವೇಶಗಳು ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲಾ ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು. ಎಲ್ಲಾ ಪ್ರವೇಶಗಳನ್ನು ಅರ್ಹತಾ ಪರೀಕ್ಷೆಗಳಲ್ಲಿನ ಅರ್ಹತೆಯ ಆಧಾರದ ಮೇಲೆ ಮಾಡತಕ್ಕದ್ದು:

ಪರಂತು, ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳ ಪ್ರವೇಶದಲ್ಲಿ ಶೇಕಡಾ ನಲವತ್ತರಷ್ಟನ್ನು ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ಮೀಸಲಿಡತಕ್ಕದ್ದು ಮತ್ತು ಪ್ರವೇಶಗಳನ್ನು ರಾಜ್ಯ ಸರ್ಕಾರವು ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡತಕ್ಕದ್ದು ಮತ್ತು ಸೀಟುಗಳನ್ನು ಅರ್ಹತೆ ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ರೂಪಿಸುವ ಮೀಸಲಾತಿ ನೀತಿಗೆ ಅನುಸಾರವಾಗಿ ಹಂಚಿಕೆ ಮಾಡತಕ್ಕದ್ದು:

ಮತ್ತು ಪರಂತು, ಯಾವುದೇ ಕೋರ್ಸಿನಲ್ಲಿ ಹತ್ತಕ್ಕಿಂತ ಕಡಿಮೆ ಸೀಟುಗಳು ಇರುವಲ್ಲಿ, ಸ್ನಾತಕೋತ್ತರ ಇಂಥ ಕೋರ್ಸುಗಳನ್ನು ಒಟ್ಟಿಗೆ ಒಂದುಗೂಡಿಸುವ ಮೂಲಕ ಮೀಸಲಿಡತಕ್ಕದ್ದು ಮತ್ತು ಯಾವುದೇ ಕೋರ್ಸಿನಲ್ಲಿ ಮೂರು ಸೀಟುಗಳಿಗಿಂತ ಕಡಿಮೆ ಇರುವಲ್ಲಿ, ಅವುಗಳನ್ನು ಸರದಿ ಸುತ್ತಿನಲ್ಲಿ ಮೀಸಲಿಡತಕ್ಕದ್ದು.

10. **ರಾಷ್ಟ್ರೀಯ ಅಧಿಮಾನ್ಯತೆ.**– ವಿಶ್ವವಿದ್ಯಾಲಯವು ಪ್ರಾರಂಭವಾದ ತರುವಾಯ ಆದಷ್ಟು ಬೇಗನೆ ಸಂಬಂಧಪಟ್ಟ ಶಾಸನಾತ್ಮಕ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳಿಂದ ಅಧಿಮಾನ್ಯತೆಯನ್ನು ಕೋರತಕ್ಕದ್ದು ಮತ್ತು ಖಾಸಗಿ ವಿಶ್ವವಿದ್ಯಾಲಯಗಳು ನಡೆಸುವ ಎಲ್ಲಾ ವ್ಯಾಸಂಗ ಕ್ರಮಗಳು ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ವಿನಿಯಮಗಳಿಗೆ ಅನುಸಾರವಾಗಿ ಇರತಕ್ಕದ್ದು.

11. **ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು.**– ಪ್ರಾಯೋಜಕ ಸಂಸ್ಥೆಯು ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದಂತೆ ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು. ಇವುಗಳಲ್ಲಿ ಪ್ರತಿಯೊಂದನ್ನು ಪ್ರಾಯೋಜಕ ಸಂಸ್ಥೆಯು ತನ್ನ ವಿವೇಚನಾನುಸಾರ ಚಲಾಯಿಸಬಹುದು, ಎಂದರೆ:-

(i) ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಮುನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(ii) ವಿಶ್ವವಿದ್ಯಾಲಯದ ಪ್ರಥಮ ಪ್ರಬಂಧಕ ಮಂಡಳಿಯನ್ನು ರಚಿಸುವುದು;

(iii) ಪ್ರಬಂಧಕ ಮಂಡಳಿಯ ಅಧ್ಯಕ್ಷರನ್ನು ನಾಮನಿರ್ದೇಶಿಸುವುದು;

(iv) ಪ್ರಬಂಧಕ ಮಂಡಳಿಯ ಸದಸ್ಯರಾಗಿ ಮೂರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(v) ಕಾರ್ಯಕಾರಿ ಪರಿಷತ್ತಿನ ಸದಸ್ಯರಾಗಿ ಇಬ್ಬರು ವ್ಯಕ್ತಿಗಳನ್ನು ನಾಮ ನಿರ್ದೇಶಿಸುವುದು;

(vi) ವಿಶ್ವವಿದ್ಯಾಲಯದ ದತ್ತಿ ನಿಧಿಗೆ ದೇಣಿಗೆ ನೀಡಲು ನಿಧಿ ಮೂಲಗಳನ್ನು ನಿರ್ಧರಿಸುವುದು;

(vii) ವಿಶ್ವವಿದ್ಯಾಲಯದ ಹಣದ ವಿನಿಯೋಗ ಮತ್ತು ವೆಚ್ಚ ಮಾಡುವುದನ್ನು ನಿರ್ಧರಿಸುವುದು;

(viii) ಈ ಅಧಿನಿಯಮದಲ್ಲಿ ಉಪಬಂಧಿಸಿರುವ ವಿಧಾನದಲ್ಲಿ ಪ್ರಬಂಧಕ ಮಂಡಳಿಯ ಸಭೆಯಲ್ಲಿಯ ವಿವಾದಗಳನ್ನು ಬಗೆಹರಿಸುವುದು;

## ಅಧ್ಯಾಯ – III

## ವಿಶ್ವವಿದ್ಯಾಲಯದ ಅಧಿಕಾರಿಗಳು

12. **ವಿಶ್ವವಿದ್ಯಾಲಯದ ಅಧಿಕಾರಿಗಳು.**– ಈ ಮುಂದಿನವರು ವಿಶ್ವವಿದ್ಯಾಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:–

(i) ಸಂದರ್ಶಕರು;

(ii) ಸಹ–ಸಂದರ್ಶಕರು;

(iii) ಕುಲಾಧಿಪತಿಗಳು;

(iv) ಕುಲಪತಿಗಳು;

(v) ಸಹಕುಲಪತಿಗಳು;

(vi) ಕುಲಸಚಿವರು;

(vii) ಹಣಕಾಸು ಅಧಿಕಾರಿ; ಮತ್ತು

(viii) ಪರಿನಿಯಮಗಳ ಮೂಲಕ ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಘೋಷಿಸಬಹುದಾದಂಥ ಇತರ ಅಧಿಕಾರಿಗಳು.

**13. ಸಂದರ್ಶಕರು.–** (1) ಕರ್ನಾಟಕದ ಘನತೆವೆತ್ತ ರಾಜ್ಯಪಾಲರು ವಿಶ್ವವಿದ್ಯಾಲಯದ ಸಂದರ್ಶಕರಾಗಿರತಕ್ಕದ್ದು ಮತ್ತು ಸಂದರ್ಶಕರು ವಿಶ್ವವಿದ್ಯಾಲಯದ ಕಾರ್ಯನಿರ್ವಹಣೆಯ ಸುಧಾರಣೆಗಾಗಿ ಸಲಹೆಗಳನ್ನು ನೀಡಬಹುದು.

(2) ಸಂದರ್ಶಕರು, ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಸಂದರ್ಶಕರು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ವ್ಯವಹಾರಗಳಿಗೆ ಸಂಬಂಧಿಸಿದಂತೆ, ಯಾವುದೇ ಪತ್ರ ಅಥವಾ ಮಾಹಿತಿಯನ್ನು ತರಿಸಿಕೊಳ್ಳುವುದು.

(ii) ಸಂದರ್ಶಕರು, ಅವರು ಸ್ವೀಕರಿಸಿದ ಮಾಹಿತಿಯ ಆಧಾರದ ಮೇಲೆ ವಿಶ್ವವಿದ್ಯಾಲಯಗಳ ಯಾವುದೇ ಪ್ರಾಧಿಕಾರವು ಮಾಡಿದ ಯಾವುದೇ ಆದೇಶ, ನಡೆಸಿದ ವ್ಯವಹರಣೆಗಳು ಅಥವಾ ಕೈಗೊಂಡ ತೀರ್ಮಾನಗಳು, ಈ ಅಧಿನಿಯಮ, ವಿನಿಯಮಗಳು ಅಥವಾ ನಿಯಮಗಳಿಗೆ ಪೂರಕವಾಗಿಲ್ಲವೆಂದು ಮನಗಂಡರೆ ಅವರು ವಿಶ್ವವಿದ್ಯಾಲಯದ ಹಿತಾಸಕ್ತಿಯಿಂದ ತಾವು ಸೂಕ್ತವೆಂದು ಭಾವಿಸಬಹುದಾದಂಥ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಹಾಗೆ ಹೊರಡಿಸಿದ ನಿರ್ದೇಶನಗಳನ್ನು ಸಂಬಂಧಪಟ್ಟವರೆಲ್ಲರೂ ಪಾಲಿಸತಕ್ಕದ್ದು.

**14. ಸಹ–ಸಂದರ್ಶಕರು.–** (1) ಕರ್ನಾಟಕ ಸರ್ಕಾರದ ಮಾನ್ಯ ಉನ್ನತ ಶಿಕ್ಷಣ ಸಚಿವರು ವಿಶ್ವವಿದ್ಯಾಲಯದ ಸಹ–ಸಂದರ್ಶಕರಾಗಿರತಕ್ಕದ್ದು.

(2) ಸಂದರ್ಶಕರ ಅನುಪಸ್ಥಿತಿಯಲ್ಲಿ ಸಹ–ಸಂದರ್ಶಕರು ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**15. ಕುಲಾಧಿಪತಿಗಳು.–** (1) ಕುಲಾಧಿಪತಿಯವರನ್ನು ಪ್ರಾಯೋಜಕ ಸಂಸ್ಥೆಯು ನೇಮಿಸತಕ್ಕದ್ದು.

(2) ಪ್ರಾಯೋಜಕ ಸಂಸ್ಥೆಯ ಪ್ರಸ್ತುತ ಅಧ್ಯಕ್ಷರು ಮೊದಲನೇ ಕುಲಾಧಿಪತಿಗಳಾಗಿರತಕ್ಕದ್ದು, ಅವರು ತಮ್ಮ ಜೀವನಪರ್ಯಂತ ಅಥವಾ ಅವರು ತಮ್ಮ ಪದವನ್ನು ಬಿಟ್ಟುಕೊಡುವವರೆಗೆ ಕುಲಾಧಿಪತಿಗಳಾಗಿ ಪದಧಾರಣ ಮಾಡಿರತಕ್ಕದ್ದು.

(3) ತದನಂತರದ ಕುಲಾಧಿಪತಿಗಳು, ಅಂಥ ನೇಮಕಾತಿಯನ್ನು ಪರಿಗಣಿಸುವ ಸಂದರ್ಭದಲ್ಲಿ ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ, ಪ್ರಾಯೋಜಕ ಸಂಸ್ಥೆಯ ನ್ಯಾಸಧಾರಿಯಾಗಿರತಕ್ಕದ್ದು ಅಥವಾ ಶಿಕ್ಷಣ, ವಿಜ್ಞಾನ, ಸಂಸ್ಕೃತಿ ಅಥವಾ ಸಾರ್ವಜನಿಕ ಜೀವನ ಕ್ಷೇತ್ರಗಳಲ್ಲಿ ರಾಷ್ಟ್ರೀಯ ಮಟ್ಟದ ಛಾಪನ್ನು ಪಡೆದಿರುವ ಅಂಥ ಇತರ ವ್ಯಕ್ತಿಯಾಗಿರತಕ್ಕದ್ದು.

(4) ಹಾಗೆ ನೇಮಕಗೊಂಡ ತದನಂತರದ ಕುಲಾಧಿಪತಿಗಳು ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ಪದಧಾರಣ ಮಾಡತಕ್ಕದ್ದು.

(5) ಕುಲಾಧಿಪತಿಗಳು ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳ ಅಡಿಯಲ್ಲಿ ಅವರಿಗೆ ಪ್ರದಾನ ಮಾಡಬಹುದಾದಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು, ಅವುಗಳಲ್ಲಿ ಈ ಮುಂದಿನ ಅಧಿಕಾರಗಳು ಒಳಗೊಂಡಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುವುದು;

(ii) ಸಂದರ್ಶಕರ ಮತ್ತು ಸಹ–ಸಂದರ್ಶಕರಿಬ್ಬರ ಗೈರುಹಾಜರಿಯಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಘಟಿಕೋತ್ಸವಗಳಲ್ಲಿ ಅಧ್ಯಕ್ಷತೆಯನ್ನು ವಹಿಸುವುದು;

(iii) ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವುದು;

(iv) ಈ ಅಧಿನಿಯಮ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಅನುಸಾರವಾಗಿ ಕುಲಪತಿಗಳನ್ನು ನೇಮಿಸುವುದು ಅಥವಾ ಪುನರ್ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(v) ಈ ಅಧಿನಿಯಮದ 16ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ನಾಮನಿರ್ದೇಶಕ ಸಮಿತಿಯ ಸದಸ್ಯರಾಗಿ ಒಬ್ಬ ವ್ಯಕ್ತಿಯನ್ನು ನಾಮನಿರ್ದೇಶನ ಮಾಡುವುದು;

(vi) ಸಹಕುಲಪತಿಗಳು, ಡೀನ್, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿಗಳ ನೇಮಕಾತಿಯನ್ನು ಪೂರ್ವಾನುಮೋದಿಸುವುದು;

(vii) ಪ್ರಬಂಧಕ ಮಂಡಳಿಯ ಸದಸ್ಯರನ್ನಾಗಿ ಇಬ್ಬರು ಶಿಕ್ಷಣ ತಜ್ಞರನ್ನು ನಾಮನಿರ್ದೇಶಿಸುವುದು;

(viii) ಮೊದಲ ಸಹಕುಲಪತಿಗಳು ಮತ್ತು ಹಣಕಾಸು ಅಧಿಕಾರಿಗಳನ್ನು ನೇಮಿಸುವುದು;

(ix) ಮೊದಲ ವ್ಯವಸ್ಥಾಪನಾ ಮಂಡಳಿ, ಹಣಕಾಸು ಸಮಿತಿ, ಸಂಶೋಧನಾ ಪರಿಷತ್ತು ಹಾಗೂ ಶೈಕ್ಷಣಿಕ ಪರಿಷತ್ತುಗಳನ್ನು ರಚಿಸುವುದು;

(x) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ ಕಾರ್ಯಸೂಚಿ ವಿಷಯಗಳನ್ನು ಪೂರ್ವಾನುಮೋದಿಸುವುದು;

(xi) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ (ಪ್ರಬಂಧಕ ಮಂಡಳಿಯ ಸಭೆಯಲ್ಲಿ ಉಂಟಾದ ವಿವಾದಗಳನ್ನು ಹೊರತುಪಡಿಸಿ) ವಿವಾದಗಳನ್ನು ಪರಿಹರಿಸುವುದು.

(6) ಪದಾಧಿಕಾರಿ ಅಥವಾ ಸಂಸ್ಥೆ ಮತ್ತು ವಿಶ್ವವಿದ್ಯಾಲಯದ ಯಾವುದೇ ಇತರ ಪದಾಧಿಕಾರಿ ಅಥವಾ ಸಂಸ್ಥೆಯ ನಡುವೆ ವಿವಾದಗಳು ಉಂಟಾದಲ್ಲಿ, ಆ ವಿವಾದವನ್ನು ಕುಲಾಧಿಪತಿಯವರ ಪರ್ಯಾಲೋಚನೆಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿವಾದದ ಸಂದರ್ಭದಲ್ಲಿ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**16. ಕುಲಪತಿಗಳು.**- (1) (2)ನೇ ಉಪಪ್ರಕರಣದ ಉಪಬಂಧಗಳಿಗೆ ಅನುಸಾರವಾಗಿ ನಾಮನಿರ್ದೇಶಕ ಸಮಿತಿಯು ಶಿಫಾರಸ್ಸು ಮಾಡಿದ ಮೂರು ವ್ಯಕ್ತಿಗಳ ಪೈಕಿಯಿಂದ ಒಬ್ಬರನ್ನು ಮೂರು ವರ್ಷಗಳ ಅವಧಿಗಾಗಿ ಕುಲಪತಿಗಳನ್ನಾಗಿ, ಪರಿನಿಯಮಗಳಲ್ಲಿ ನಿಯಮಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರು ನೇಮಿಸತಕ್ಕದ್ದು. ಮೂರು ವರ್ಷಗಳ ಅವಧಿಯು ಮುಗಿದ ತರುವಾಯ, ಇದನ್ನು ಮೂರು ವರ್ಷಗಳ ಮತ್ತೊಂದು ಅವಧಿಗೆ ನವೀಕರಿಸಬಹುದು:

ಪರಂತು, ಕುಲಪತಿಯವರು, ತಮ್ಮ ಅವಧಿ ಮುಗಿದ ನಂತರವೂ ಹೊಸ ಕುಲಪತಿಯವರು ಸೇರಿಕೊಳ್ಳುವವರೆಗೆ ಪದದಲ್ಲಿ ಮುಂದುವರೆಯತಕ್ಕದ್ದು. ಆದಾಗ್ಯೂ ಈ ಅವಧಿಯು ಯಾವುದೇ ಸಂದರ್ಭದಲ್ಲಿ ಒಂದು ವರ್ಷವನ್ನು ಮೀರತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಹೇಳಿರುವ ನಾಮನಿರ್ದೇಶಕ ಸಮಿತಿಯಲ್ಲಿ ಈ ಮುಂದಿನ ವ್ಯಕ್ತಿಗಳು ಇರತಕ್ಕದ್ದು, ಎಂದರೆ:-

(i) ಕುಲಾಧಿಪತಿಯವರು ನಾಮನಿರ್ದೇಶಿಸಿದ ಒಬ್ಬ ವ್ಯಕ್ತಿ;

(ii) ಪ್ರಬಂಧಕ ಮಂಡಳಿಯ ಇಬ್ಬರು ನಾಮ ನಿರ್ದೇಶಿತರು, ಇವರಲ್ಲಿ ಒಬ್ಬರನ್ನು ಪ್ರಬಂಧಕ ಮಂಡಳಿಯು ಸಮಿತಿಯ ಸಂಚಾಲಕರೆಂದು ನಾಮನಿರ್ದೇಶಿಸತಕ್ಕದ್ದು.

(3) ನಾಮನಿರ್ದೇಶನ ಸಮಿತಿಯು, ಅರ್ಹತೆಯ ಆಧಾರದ ಮೇಲೆ ಕುಲಪತಿಯ ಹುದ್ದೆಗೆ ಸೂಕ್ತವಾದ ಮೂರು ವ್ಯಕ್ತಿಗಳ ಹೆಸರನ್ನು ಶಿಫಾರಸ್ಸು ಮಾಡತಕ್ಕದ್ದು ಮತ್ತು ಅದನ್ನು ಪ್ರತಿಯೊಬ್ಬ ವ್ಯಕ್ತಿಯ ವಿದ್ಯಾರ್ಹತೆ ಮತ್ತಿತರ ವಿಶಿಷ್ಟ ಪ್ರಶಸ್ತಿಗಳನ್ನು ತಿಳಿಸುವ ಒಂದು ಸಂಕ್ಷಿಪ್ತ ವರದಿಯೊಂದಿಗೆ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು.

(4) ಕುಲಪತಿಯವರು ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಾಹಕ ಮತ್ತು ಶೈಕ್ಷಣಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣವನ್ನು ಚಲಾಯಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯದ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೊಳಿಸತಕ್ಕದ್ದು:

ಪರಂತು, ಶಿಕ್ಷಕರ ನೇಮಕಾತಿಯನ್ನು ಹೊರತುಪಡಿಸಿ ಕೂಡಲೇ ಕ್ರಮವನ್ನು ಕೈಗೊಳ್ಳಬೇಕಾದ ತುರ್ತು ಸ್ವರೂಪದ ಯಾವುದೇ ಇತರ ವಿಷಯಗಳಲ್ಲಿ ಮತ್ತು ಅದನ್ನು ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ವಿಶ್ವವಿದ್ಯಾಲಯವು ಇದಕ್ಕಾಗಿ ಅಧಿಕೃತಗೊಳಿಸಿದ್ದ ಯಾವೊಬ್ಬ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ಇತರ ಸಂಸ್ಥೆಯು ಕೂಡಲೇ ಕ್ರಮಕೈಗೊಳ್ಳುವುದು ಸಾಧ್ಯವಿರದಿರುವಾಗ ಕುಲಪತಿಯವರು ತಾನು ಸೂಕ್ತವೆಂದು ಭಾವಿಸಬಹುದಾದಂತಹ ಕ್ರಮವನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆದು ಕೈಗೊಳ್ಳತಕ್ಕದ್ದು.

(5) ಕುಲಪತಿಯವರು ಪರಿನಿಯಮಗಳು ಅಥವಾ ನಿಯಮಗಳಲ್ಲಿ ಹೇಳಲಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು:

ಪರಂತು, ಕುಲಪತಿಗಳ ಅಭಿಪ್ರಾಯದಲ್ಲಿ, ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಯಾವುದೇ ನಿರ್ಣಯವು, ಈ ಅಧಿನಿಯಮ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳು, ವಿನಿಯಮಗಳು ಅಥವಾ ನಿಯಮಗಳ ಮೂಲಕ ಪ್ರದತ್ತವಾದ ಅಧಿಕಾರದ ಹೊರಗಿದ್ದರೆ ಅಥವಾ ವಿಶ್ವವಿದ್ಯಾಲಯದ ಹಿತಾಸಕ್ತಿಗೆ ಪ್ರತಿಕೂಲವಾಗಬಹುದಾಗಿದ್ದರೆ, ಅದರ ನಿರ್ಣಯದ ದಿನಾಂಕದಿಂದ ಹದಿನೈದು ದಿನಗಳ ಒಳಗೆ ತನ್ನ ನಿರ್ಣಯವನ್ನು ಪರಿಷ್ಕರಿಸಲು ಸಂಬಂಧಪಟ್ಟ ಪ್ರಾಧಿಕಾರವನ್ನು ಆತನು ಕೋರತಕ್ಕದ್ದು ಮತ್ತು ಪ್ರಾಧಿಕಾರವು ಅಂಥ ನಿರ್ಣಯವನ್ನು ಸಂಪೂರ್ಣವಾಗಿ ಅಥವಾ ಭಾಗಶಃವಾಗಿ ಪರಿಷ್ಕರಿಸಲು ನಿರಾಕರಿಸಿದ ಸಂದರ್ಭದಲ್ಲಿ ಅಥವಾ ಹದಿನೈದು ದಿನಗಳೊಳಗೆ ಯಾವುದೇ ನಿರ್ಣಯವನ್ನು ತೆಗೆದುಕೊಳ್ಳಲು ವಿಫಲವಾದಲ್ಲಿ, ನಂತರ ಅಂಥ ವಿಷಯವನ್ನು ಕುಲಾಧಿಪತಿಗಳಿಗೆ ಕಳುಹಿಸತಕ್ಕದ್ದು ಮತ್ತು ಈ ಬಗ್ಗೆ ಇವರ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

(6) ಕುಲಪತಿಯವರ ಸೇವೆಗಳನ್ನು, ಪ್ರಬಂಧಕ ಮಂಡಳಿಯ ಅನುಮೋದನೆಯೊಂದಿಗೆ ಮತ್ತು ಸಹಜ ನ್ಯಾಯದ ತತ್ವಗಳನ್ನು ಅನುಸರಿಸಿದ ನಂತರ ಹಾಗೂ ಶಿಸ್ತಿನ ಆಧಾರದ ಮೇಲೆ ಅಂತ್ಯಗೊಳಿಸುವ ಸಂದರ್ಭವೂ ಸೇರಿದಂತೆ, ಪ್ರಕರಣದ

ಬಗ್ಗೆ ಕುಲಪತಿಯು ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡಿದ ತರುವಾಯ, ಕುಲಾಧಿಪತಿಯವರು ಅಂತ್ಯಗೊಳಿಸಬಹುದು.

(7) ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಸಂದರ್ಶಕರು, ಸಹ-ಸಂದರ್ಶಕರು ಮತ್ತು ಕುಲಾಧಿಪತಿಯವರು ಇವರುಗಳ ಗೈರು ಹಾಜರಿಯ ಸಂದರ್ಭದಲ್ಲಿ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**17. ಸಹಕುಲಪತಿಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಮೂರು ಜನರನ್ನು ಮೀರದಂತೆ ಸಹಕುಲಪತಿಗಳನ್ನು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**18. ವ್ಯಾಸಂಗ ವಿಭಾಗಗಳ ಡೀನ್‌ಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಪರಿನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವ್ಯಾಸಂಗ ವಿಭಾಗಗಳ ಡೀನ್‌ಗಳನ್ನು ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**19. ಕುಲಸಚಿವರು.–** (1) ಕುಲಾಧಿಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಸಚಿವರನ್ನು ನೇಮಕ ಮಾಡತಕ್ಕದ್ದು.

(2) ಪರಿನಿಯಮಗಳಲ್ಲಿ ಪರಿಭಾಷಿಸಿರುವಂಥ ಎಲ್ಲಾ ಕರಾರುಗಳನ್ನು ವಿಶ್ವವಿದ್ಯಾಲಯದ ಪರವಾಗಿ ಕುಲಸಚಿವರು ಮಾಡಿಕೊಳ್ಳತಕ್ಕದ್ದು ಮತ್ತು ಅದಕ್ಕೆ ಸಹಿ ಹಾಕತಕ್ಕದ್ದು.

(3) ಕುಲಸಚಿವರು ವಿಶ್ವವಿದ್ಯಾಲಯದ ಪರವಾಗಿ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಪರಿನಿಯಮಗಳಿಂದ ಪ್ರದತ್ತಗೊಳಿಸಬಹುದಾದಂಥ ಅಥವಾ ಕುಲಾಧಿಪತಿಯವರು ಮತ್ತು ಕುಲಪತಿಯವರು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು ವಿಶ್ವವಿದ್ಯಾಲಯದ ದಾಖಲೆಗಳು ಮತ್ತು ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು, ಕುಲಪತಿಯವರು ಅಥವಾ ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಅಂಥ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿತಕ್ಕದ್ದು.

**20. ಹಣಕಾಸು ಅಧಿಕಾರಿ.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು, ಪರಿನಿಯಮಗಳ ಮೂಲಕ ಪ್ರದತ್ತಗೊಳಿಸಬಹುದಾದ ಅಂಥ ವಿಧಾನದಲ್ಲಿ ಹಣಕಾಸು ಅಧಿಕಾರಿಯನ್ನು ನೇಮಕ ಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**21. ಇತರ ಅಧಿಕಾರಿಗಳು.–** ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ ನೇಮಕಾತಿಯ ವಿಧಾನ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಕರ್ತವ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ – IV
## ವಿಶ್ವವಿದ್ಯಾಲಯದ ಪ್ರಾಧಿಕಾರಗಳು

22. ವಿಶ್ವವಿದ್ಯಾಲಯದ ಪ್ರಾಧಿಕಾರಗಳು.– ಈ ಮುಂದಿನವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:–

(i) ಪ್ರಬಂಧಕ ಮಂಡಳಿ;

(ii) ವ್ಯವಸ್ಥಾಪನಾ ಮಂಡಳಿ;

(iii) ಶೈಕ್ಷಣಿಕ ಪರಿಷತ್ತು;

(iv) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು;

(v) ಹಣಕಾಸು ಸಮಿತಿ; ಮತ್ತು

(vi) ವಿಶ್ವವಿದ್ಯಾಲಯದ ಪ್ರಾಧಿಕಾರಗಳೆಂದು ಪರಿನಿಯಮಗಳ ಮೂಲಕ ಘೋಷಿಸಬಹುದಾದ ಅಂಥ ಇತರ ಪ್ರಾಧಿಕಾರಗಳು.

**23. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು.–** (1) ಪ್ರಬಂಧಕ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು – ಅಧ್ಯಕ್ಷರು;

(ii) ಕುಲಪತಿಯವರು – ಸದಸ್ಯರು;

(iii) ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(iv) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(v) ರಾಜ್ಯ ಸರ್ಕಾರವು ನಾಮ ನಿರ್ದೇಶನ ಮಾಡಿದ ಆಡಳಿತವನ್ನು ಒಳಗೊಂಡಂತೆ ವ್ಯವಸ್ಥಾಪನೆ, ಹಣಕಾಸು ಅಥವಾ ಯಾವುದೇ ಇತರ ವಿಶೇಷ ಕ್ಷೇತ್ರದಲ್ಲಿನ ಒಬ್ಬರು ತಜ್ಞರು;

(vi) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಇಬ್ಬರು ವ್ಯಕ್ತಿಗಳು ಅವರ ಪೈಕಿ ಒಬ್ಬರು ಮಹಿಳೆಯಾಗಿರತಕ್ಕದ್ದು;

(vii) ಸಹ ಕುಲಪತಿಯವರು ಮತದಾನದ ಹಕ್ಕಿಲ್ಲದ ಸದಸ್ಯರಾಗಿರತಕ್ಕದ್ದು;

(viii) ವಿಶ್ವವಿದ್ಯಾಲಯ ಅನುದಾನ ಆಯೋಗದ ನಾಮನಿರ್ದೇಶಿತ ಒಬ್ಬ ಸುಪ್ರಸಿದ್ಧ ಶಿಕ್ಷಣ ತಜ್ಞರು.

(2) ಕುಲಸಚಿವರು ಪ್ರಬಂಧಕ ಮಂಡಳಿಯ ಮತ ದಾನದ ಹಕ್ಕಿರದ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ಪ್ರಬಂಧಕ ಮಂಡಳಿಯ ಸದಸ್ಯರ ಪದಾವಧಿ, ಸರ್ಕಾರದಿಂದ ನಾಮನಿರ್ದೇಶಿತರಾದ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ನೇಮಕಾತಿ, ನವೀಕರಣ ಮತ್ತು ತೆಗೆದುಹಾಕುವುದು ಮುಂತಾದವುಗಳು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಾಧಿಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರ ಗೈರುಹಾಜರಿಯಲ್ಲಿ ಕುಲಾಧಿಪತಿಯವರಿಂದ ನಾಮನಿರ್ದೇಶಿತರಾದ ಯಾರಾದರೂ ಒಬ್ಬರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು. ಅಂಥ ಸಭೆಯ ಅಧ್ಯಕ್ಷತೆಯನ್ನು ವಹಿಸುವುದಕ್ಕೆ ಕುಲಾಧಿಪತಿಯವರು ಯಾವೊಬ್ಬ ವ್ಯಕ್ತಿಯನ್ನೂ ನಾಮನಿರ್ದೇಶನ ಮಾಡಿರದಿದ್ದಲ್ಲಿ, ಸಭೆಯಲ್ಲಿ ಹಾಜರಿರುವ ಸದಸ್ಯರು ಸರಳ ಬಹುಮತದ ಮೂಲಕ ಅವರುಗಳ ಪೈಕಿಯಿಂದಲೇ ಆ ಸಭೆಗೆ ಮಾತ್ರವೇ ಅಧ್ಯಕ್ಷನನ್ನು ಚುನಾಯಿಸತಕ್ಕದ್ದು.

(5) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಿಗೆ, ಅಂಥ ಸಭೆಯಲ್ಲಿ ಹಾಜರಾಗುವ ಮತ್ತು ಮತದಾನ ನೀಡುವ ಮೂರು ಜನ ಸದಸ್ಯರು ಗಣಪೂರ್ತಿ (ಕೋರಂ) ಆಗಿರತಕ್ಕದ್ದು:

ಪರಂತು, ಪ್ರಬಂಧಕ ಮಂಡಳಿಯ ಯಾವುದೇ ಸಭೆಯ ಕೋರಂ ಪೂರ್ಣವಾಗಬೇಕಾದರೆ ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಿರುವುದು ಮತ್ತು ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ನಾಮನಿರ್ದೇಶಿತರು ಹಾಜರಾಗದೇ ಇದ್ದಾಗ ಕುಲಪತಿಯವರು ಹಾಜರಿರುವುದು ಯಾವಾಗಲೂ ಅವಶ್ಯವಾಗಿರತಕ್ಕದ್ದು.

(6) ಪ್ರಬಂಧಕ ಮಂಡಳಿಯು ವಿಶ್ವವಿದ್ಯಾಲಯದ ಪ್ರಧಾನ ಪ್ರಬಂಧಕ ಸಂಸ್ಥೆಯಾಗಿರತಕ್ಕದ್ದು ಮತ್ತು ಅದು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಕಗೊಳಿಸುವುದು;

(ii) ವಿಶ್ವವಿದ್ಯಾಲಯವು ಅನುಸರಿಸಬೇಕಾದ ಕಾರ್ಯನೀತಿಗಳನ್ನು ರಚಿಸುವುದು;

(iii) ಈ ಅಧಿನಿಯಮದ ಅಥವಾ ಪರಿನಿಯಮಗಳ ಅಥವಾ ನಿಯಮಗಳ ಉಪಬಂಧಗಳಿಗೆ ಅನುಗುಣವಾಗಿ ಇರದ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ತೀರ್ಮಾನಗಳನ್ನು ಪುನರೀಕ್ಷಿಸುವುದು;

(iv) ವಿಶ್ವವಿದ್ಯಾಲಯದ ಆಯವ್ಯಯ ಮತ್ತು ವಾರ್ಷಿಕ ವರದಿಗಳನ್ನು ಅನುಮೋದಿಸುವುದು;

(v) ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸುವುದು ಅಥವಾ ಈಗಾಗಲೇ ಇರುವ ಪರಿನಿಯಮಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವುದು ಅಥವಾ ನಿರಸನಗೊಳಿಸುವುದು;

(vi) ವಿಶ್ವವಿದ್ಯಾಲಯವನ್ನು ಸ್ವಯಂಸಮಾಪನಗೊಳಿಸುವ ನಿರ್ಧಾರವನ್ನು ತೆಗೆದುಕೊಳ್ಳುವುದು;

(vii) ಸರ್ಕಾರಕ್ಕೆ ಸಲ್ಲಿಸುವ ಪ್ರಸ್ತಾವಗಳನ್ನು ಅನುಮೋದಿಸುವುದು;

(viii) ಶುಲ್ಕ ನಿಯಂತ್ರಣ ಸಮಿತಿಗೆ ಮೂವರು ಸದಸ್ಯರನ್ನು ನಾಮನಿರ್ದೇಶನ ಮಾಡುವುದು;

(ix) ವಿಶ್ವವಿದ್ಯಾಲಯದ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕೆ ಅಪೇಕ್ಷಣೀಯವೆಂದು ಕಂಡುಬರುವಂಥ ತೀರ್ಮಾನಗಳನ್ನು ಮತ್ತು ಕ್ರಮಗಳನ್ನು ಕೈಗೊಳ್ಳುವುದು.

(7) ಪ್ರಬಂಧಕ ಮಂಡಳಿಯು ಒಂದು ವರ್ಷದಲ್ಲಿ ಕನಿಷ್ಠ ಮೂರು ಸಲ ಸಭೆ ಸೇರತಕ್ಕದ್ದು.

(8) ಪ್ರಬಂಧಕ ಮಂಡಳಿಯು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಸಮಯ ಮತ್ತು ಸ್ಥಳದಲ್ಲಿ ಸಭೆ ಸೇರತಕ್ಕದ್ದು.

**24. ವ್ಯವಸ್ಥಾಪನಾ ಮಂಡಳಿ.**– (1) ವ್ಯವಸ್ಥಾಪನಾ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಗಳು;

(ii) ಸಹಕುಲಪತಿಗಳು;

(iii) ಕುಲಸಚಿವರು;

(iv) ಪ್ರಾಯೋಜಕ ಸಂಸ್ಥೆಯ ಇಬ್ಬರು ನಾಮನಿರ್ದೇಶಿತರು;

(v) ಕುಲಪತಿಗಳು ನಾಮನಿರ್ದೇಶಿಸಬಹುದಾದ ವಿದ್ಯಾಲಯಗಳ ಇಬ್ಬರು ಡೀನ್‌ಗಳು;

(2) ಕುಲಪತಿಯವರು ವ್ಯವಸ್ಥಾಪನಾ ಮಂಡಳಿಯ ಅಧ್ಯಕ್ಷರಾಗಿರತಕ್ಕದ್ದು ಮತ್ತು ಕುಲಸಚಿವರು ವ್ಯವಸ್ಥಾಪನಾ ಮಂಡಳಿಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ವ್ಯವಸ್ಥಾಪನಾ ಮಂಡಳಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ವ್ಯವಸ್ಥಾಪನಾ ಮಂಡಳಿಯ ಎಲ್ಲಾ ಸಭೆಗಳಲ್ಲಿ ಯಾವಾಗಲೂ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು ಹಾಗೂ ಕುಲಪತಿಯವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೇ ಇದ್ದ ಸಂದರ್ಭದಲ್ಲಿ ಸಭೆಯಲ್ಲಿ ಹಾಜರಿರುವ ಸದಸ್ಯರು ಚುನಾಯಿಸಿದ ಯಾವುದೇ ಇತರ ಸದಸ್ಯರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ವ್ಯವಸ್ಥಾಪನಾ ಮಂಡಳಿಯ ಸಭೆಯಲ್ಲಿ ಯಾವುದೇ ವಿಷಯವನ್ನು ಕುರಿತು ವಿವಾದ ಉಂಟಾದಲ್ಲಿ ಸದರಿ ವಿಷಯವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯದ ಬಗ್ಗೆ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**25. ಶೈಕ್ಷಣಿಕ ಪರಿಷತ್ತು.**–(1) ಶೈಕ್ಷಣಿಕ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಕಾರ್ಯದರ್ಶಿಗಳು

(iv) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಶೈಕ್ಷಣಿಕ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಶೈಕ್ಷಣಿಕ ಸಂಸ್ಥೆಯಾಗಿರತಕ್ಕದ್ದು ಮತ್ತು ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಹಾಗೂ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**26. ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು.**– (1) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಸಂಶೋಧನಾ ಮತ್ತು ಅನ್ವೇಷಣಾ ಸಮಿತಿಯಾಗಿರತಕ್ಕದ್ದು ಹಾಗೂ ಸಂಶೋಧನಾ ಕ್ಷೇತ್ರಗಳ ಆದ್ಯತೆಯೂ ಒಳಗೊಂಡಂತೆ, ವಿಶ್ವವಿದ್ಯಾಲಯವು ಕೈಗೊಳ್ಳಬೇಕಾದ ಸಂಶೋಧನೆಯ ಬಗ್ಗೆ ಒಂದು ವ್ಯಾಪಕವಾದ ಪರಿಪೂರ್ಣ ಭವಿಷ್ಯದ್ ದೃಷ್ಟಿಯನ್ನು ಒದಗಿಸತಕ್ಕದ್ದು. ಈ ಪರಿಷತ್ತು, ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಮತ್ತು ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಸಂಶೋಧನೆ ಮತ್ತು ಅನ್ವೇಷಣಾ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಸಂಶೋಧನೆಯ ಡೀನ್ – ಕಾರ್ಯದರ್ಶಿ

(iv) ಅನ್ವೇಷಣಾ ವಿಭಾಗದ ಮುಖ್ಯಸ್ಥರು – ಸದಸ್ಯರು

(v) ಎಲ್ಲಾ ವ್ಯಾಸಂಗ ವಿಭಾಗಗಳ ಡೀನ್‌ಗಳು – ಸದಸ್ಯರು ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

**27. ಹಣಕಾಸು ಸಮಿತಿ.–** (1) ಹಣಕಾಸು ಸಮಿತಿ ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

| | | |
|---|---|---|
| (i) | ಕುಲಾಧಿಪತಿಯವರು ಅಥವಾ ಅವರ ನಾಮನಿರ್ದೇಶಿತರು | – ಅಧ್ಯಕ್ಷರು |
| (ii) | ಕುಲಪತಿಯವರು | – ಸದಸ್ಯರು |
| (iii) | ಕುಲಸಚಿವರು | – ಸದಸ್ಯರು |
| (iv) | ಹಣಕಾಸು ಅಧಿಕಾರಿ | – ಕಾರ್ಯದರ್ಶಿ |
| (v) | ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು | – ಸದಸ್ಯರು; ಮತ್ತು |
| (vi) | ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು. | |

(2) ಹಣಕಾಸು ಸಮಿತಿಯು ಹಣಕಾಸಿನ ವಿಷಯಗಳನ್ನು ಕೈಗೊಳ್ಳುವ ವಿಶ್ವವಿದ್ಯಾಲಯದ ಪ್ರಧಾನ ಹಣಕಾಸು ಸಂಸ್ಥೆಯಾಗಿರತಕ್ಕದ್ದು ಹಾಗೂ ಅದು ಈ ಅಧಿನಿಯಮ, ನಿಯಮಗಳು ಮತ್ತು ಪರಿನಿಯಮಗಳ ಉಪಬಂಧಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಹಣಕಾಸು ವಿಷಯಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**28. ಇತರ ಪ್ರಾಧಿಕಾರಗಳು.–** ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ರಚನೆ, ಅಧಿಕಾರಗಳು ಹಾಗೂ ಪ್ರಕಾರ್ಯಗಳು ಪರಿನಿಯಮಗಳಿಂದ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

**29. ಒಂದು ಪ್ರಾಧಿಕಾರದ ಅಥವಾ ಸಂಸ್ಥೆಯ ಸದಸ್ಯತ್ವಕ್ಕೆ ಅನರ್ಹತೆ.–** ವಿಶ್ವವಿದ್ಯಾಲಯದ ಸಂಸ್ಥೆಗಳ ಯಾವುವೇ ಪ್ರಾಧಿಕಾರಗಳ ಒಬ್ಬ ವ್ಯಕ್ತಿಯು,-

(ಎ) ಅಸ್ವಸ್ಥ ಚಿತ್ತನಾಗಿದ್ದು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿಸಲ್ಪಟ್ಟಿದ್ದರೆ;

(ಬಿ) ಅವಿಮುಕ್ತ ದಿವಾಳಿಯಾಗಿದ್ದರೆ;

(ಸಿ) ನೈತಿಕ ಅಧಃಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದರೆ;

(ಡಿ) ಖಾಸಗಿ ಬೋಧನಾ ತರಗತಿಗಳನ್ನು ನಡೆಸುತ್ತಿದ್ದರೆ ಅಥವಾ ಸ್ವತ: ನಿರತನಾಗಿದ್ದರೆ;

(ಇ) ಯಾವುದೇ ವಿಧದಲ್ಲಿ, ಎಲ್ಲಿಯೇ, ಯಾವುದೇ ಪರೀಕ್ಷೆಯನ್ನು ನಡೆಸುವಲ್ಲಿ ಅನುಚಿತ ಅಭ್ಯಾಸದಲ್ಲಿ ತೊಡಗಿದ್ದಕ್ಕಾಗಿ ಅಥವಾ ಉತ್ತೇಜಿಸಿದ್ದಕ್ಕಾಗಿ ದಂಡಿತನಾಗಿದ್ದರೆ;

(ಎಫ್) ಪ್ರಾಯೋಜಿತ ಸಂಸ್ಥೆಯು ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಯಾವೊಬ್ಬ ಸದಸ್ಯನನ್ನು ಆ ಪದವನ್ನು ಹೊಂದಿರುವುದಕ್ಕೆ ಅರ್ಹನಲ್ಲನೆಂದು ಲಿಖಿತದಲ್ಲಿ ಅಭಿಪ್ರಾಯ ನೀಡಿದಾಗಲೆಲ್ಲಾ,

–ಸದಸ್ಯನಾಗಿರುವುದಕ್ಕೆ ಅನರ್ಹನಾಗತಕ್ಕದ್ದು.

**30. ಖಾಲಿಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಕಾರ್ಯ ಅಥವಾ ವ್ಯವಹರಣೆಗಳು ಕೇವಲ ಅದರಲ್ಲಿ ಯಾವುದೇ ಖಾಲಿಸ್ಥಾನ ಇದೆ ಎಂಬ ಕಾರಣದಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣದಿಂದ ಮಾತ್ರವೇ ಅಸಿಂಧುವಾಗತಕ್ಕದ್ದಲ್ಲ.

**31. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು.–** (1) ಯಾವುವೇ ಕಾರ್ಯಸೂಚಿ ವಿಷಯಗಳನ್ನು ಕುಲಾಧಿಪತಿಯವರ ಪೂರ್ವಾನುಮೋದನೆಯನ್ನು ಪಡೆಯದೇ ಪ್ರಬಂಧಕ ಮಂಡಳಿಯ ಅಥವಾ ಕಾರ್ಯಕಾರಿ ಪರಿಷತ್ತು ಅಥವಾ ಯಾವುದೇ ಸಮಿತಿಯ ಸಭೆಗಳ ಕಾರ್ಯಸೂಚಿ ವಿಷಯಗಳಲ್ಲಿ ಸೇರಿಸತಕ್ಕದ್ದಲ್ಲ ಅಥವಾ ಚರ್ಚೆಗೆ ತೆಗೆದುಕೊಳ್ಳತಕ್ಕದ್ದಲ್ಲ ಮತ್ತು ತೀರ್ಮಾನಿಸತಕ್ಕದ್ದಲ್ಲ.

(2) ಈ ಅಧಿನಿಯಮದ ಯಾವುದೇ ಉಪಬಂಧಗಳನ್ನು ಪಾಲಿಸದೆ ಇರುವ ಸಂದರ್ಭದಲ್ಲಿ, ಕುಲಾಧಿಪತಿಯವರು ವಿಶ್ವವಿದ್ಯಾಲಯದ ಯಾವುದೇ ಪದಾಧಿಕಾರಿ ಅಥವಾ ಸಂಸ್ಥೆಯು ತೆಗೆದುಕೊಂಡ ಎಲ್ಲಾ ತೀರ್ಮಾನಗಳನ್ನು ವಿಪರ್ಯಯಗೊಳಿಸುವ ಮೂಲಕ ಪರಿಹಾರ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಅಧಿಕಾರವನ್ನು ಎಲ್ಲಾ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಅಂಥ ಪರಿಹಾರ ಕ್ರಮದ ಪರಿಣಾಮವಾಗಿ ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ವಿಶ್ವವಿದ್ಯಾಲಯದ ಪದಾಧಿಕಾರಿ ಅಥವಾ ಸಂಸ್ಥೆಯು ಕೈಗೊಂಡಿದ್ದ ಎಲ್ಲಾ ಅಂಥ ಕ್ರಮಗಳು, ಮೊದಲಿನಿಂದಲೂ ಶೂನ್ಯ ಮತ್ತು ಅಕೃತ ಎಂದು ಭಾವಿಸತಕ್ಕದ್ದು ಹಾಗೂ ತತ್ಪರಿಣಾಮವಾಗಿ, ಉಪಬಂಧ ಪಾಲಿಸದೇ ಇದ್ದ ವಿಷಯ ಅಥವಾ ನಿರ್ಧಾರದ ಸಂಬಂಧದಲ್ಲಿ ಅದಕ್ಕೆ ಮುಂಚೆ ಇದ್ದ ವಸ್ತುಸ್ಥಿತಿಯೇ ಮುಂದುವರಿಯತಕ್ಕದ್ದು.

## ಅಧ್ಯಾಯ – V

## ಪರಿನಿಯಮಗಳು ಮತ್ತು ವಿನಿಯಮಗಳು

**32. ಪರಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಪರಿನಿಯಮಗಳು ವಿಶ್ವವಿದ್ಯಾಲಯಕ್ಕೆ ಮತ್ತು ಸಿಬ್ಬಂದಿಗೆ ಸಂಬಂಧಿಸಿದ ಎಲ್ಲಾ ಅಥವಾ ಯಾವುದೇ ವಿಷಯಕ್ಕೆ ಈ ಕೆಳಗಿನಂತೆ ಉಪಬಂಧ ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಕಾರ್ಯಕಲಾಪಗಳನ್ನು ನಡೆಸುವ ಮತ್ತು ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸದಿರುವ ಸಂಸ್ಥೆಗಳ ರಚನೆಯ ಕಾರ್ಯವಿಧಾನ;

(ii) 51ನೇ ಪ್ರಕರಣಕ್ಕೆ ಒಳಪಟ್ಟು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ವಿಶ್ವವಿದ್ಯಾಲಯ ದತ್ತಿ ನಿಧಿ, ಸಾಮಾನ್ಯ ನಿಧಿ ಹಾಗೂ ಅಭಿವೃದ್ಧಿ ನಿಧಿಗಳ ನಿರ್ವಹಣೆ;

(iii) ಕುಲಪತಿಗಳು, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರ ನೇಮಕಾತಿಯ ನಿಬಂಧನೆಗಳು ಹಾಗೂ ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಪ್ರಕಾರ್ಯಗಳು;

(iv) ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ, ಅಧ್ಯಾಪಕರ ಮತ್ತು ನೌಕರರ ನೇಮಕಾತಿ ವಿಧಾನ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(v) ವಿಶ್ವವಿದ್ಯಾಲಯ ಹಾಗೂ ಅದರ ಅಧಿಕಾರಿಗಳು, ವ್ಯಾಸಂಗ ವಿಭಾಗದ (ಫ್ಯಾಕಲ್ಟಿ) ಸದಸ್ಯರು, ನೌಕರರು ಹಾಗೂ ವಿದ್ಯಾರ್ಥಿಗಳ ನಡುವೆ ಉಂಟಾದ ವಿವಾದಗಳನ್ನು ಪರಿಹರಿಸುವ ಕಾರ್ಯವಿಧಾನ;

(vi) ವಿಭಾಗಗಳು ಮತ್ತು ವ್ಯಾಸಂಗ ವಿಭಾಗಗಳ (ಫ್ಯಾಕಲ್ಟಿಗಳ) ಸೃಜನೆ, ರದ್ದತಿ ಅಥವಾ ಪುನಾರಚನೆ;

(vii) ಇತರ ವಿಶ್ವವಿದ್ಯಾಲಯಗಳು ಅಥವಾ ಉನ್ನತ ಕಲಿಕಾ ಸಂಸ್ಥೆಗಳ ಜೊತೆಯಲ್ಲಿ ಸಹಕರಿಸಬೇಕಾದ ರೀತಿ;

(viii) ಗೌರವ ಪದವಿಗಳ ನೀಡಿಕೆಯ ಕಾರ್ಯವಿಧಾನ;

(ix) ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿವೇತನ ಮಂಜೂರಾತಿಗೆ ಸಂಬಂಧಿಸಿದ ಉಪಬಂಧಗಳು;

(x) ವಿವಿಧ ವ್ಯಾಸಂಗ ಕ್ರಮಗಳಲ್ಲಿನ ಸೀಟುಗಳ ಸಂಖ್ಯೆಗೆ ಸಂಬಂಧಿಸಿದ ಕಾರ್ಯನೀತಿಗಳು ಮತ್ತು ಅಂಥ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಕಾರ್ಯವಿಧಾನ;

(xi) ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಶುಲ್ಕಕ್ಕೆ ಸಂಬಂಧಿಸಿದ ಕಾರ್ಯನೀತಿ;

(xii) ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಉಚಿತ ಶಿಕ್ಷಣ, ಪದಕಗಳು ಹಾಗೂ ಬಹುಮಾನಗಳನ್ನು ಪ್ರಾರಂಭಿಸುವುದು;

(xiii) ಪ್ರಬಂಧಕ ಮಂಡಳಿಯು ನಿರ್ಧರಿಸಬಹುದಾದ ಅಥವಾ ಈ ಅಧಿನಿಯಮದ ಅಡಿಯಲ್ಲಿ ಪರಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬೇಕಾದ ಅಗತ್ಯತೆಯುಳ್ಳ ಯಾವುದೇ ಇತರ ವಿಷಯಗಳು.

**33. ಪರಿನಿಯಮಗಳ ರಚನೆ ವಿಧಾನ.–** (1) ವ್ಯವಸ್ಥಾಪನಾ ಮಂಡಳಿಯು ರಚಿಸಿದ ಮೊದಲ ಪರಿನಿಯಮಗಳನ್ನು ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ವ್ಯವಸ್ಥಾಪನಾ ಮಂಡಳಿಯು ಸಲ್ಲಿಸಿದ ಮೊದಲ ಪರಿನಿಯಮಗಳನ್ನು ಪ್ರಬಂಧಕ ಮಂಡಳಿಯು ಪರಿಗಣಿಸತಕ್ಕದ್ದು ಹಾಗೂ ತಾನು ಅವಶ್ಯವೆಂದು ಭಾವಿಸಬಹುದಾದ ಅಂಥ ಮಾರ್ಪಾಡುಗಳು, ಯಾವುದಾದರು ಇದ್ದಲ್ಲಿ, ಅವುಗಳೊಡನೆ ತನ್ನ ಅನುಮೋದನೆಯನ್ನು ನೀಡತಕ್ಕದ್ದು.

(3) ವಿಶ್ವವಿದ್ಯಾಲಯವು, ಪ್ರಬಂಧಕ ಮಂಡಳಿಯು ಅನುಮೋದಿಸಿದ ಮೊದಲ ಪರಿನಿಯಮಗಳನ್ನು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ಪ್ರಕಟಿಸತಕ್ಕದ್ದು ಮತ್ತು ತದನಂತರ ಮೊದಲ ಪರಿನಿಯಮಗಳ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**34. ಪರಿನಿಯಮಗಳ ತಿದ್ದುಪಡಿಯ ಅಧಿಕಾರ.–** ಪ್ರಬಂಧಕ ಮಂಡಳಿಯು ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸಬಹುದು ಅಥವಾ ಪರಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ಅವನ್ನು ನಿರಸನಗೊಳಿಸಬಹುದು.

**35. ವಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ವಿನಿಯಮಗಳು ಈ ಮುಂದಿನ ವಿಷಯಗಳಿಗೆ ಉಪಬಂಧಗಳನ್ನು ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ವಿದ್ಯಾರ್ಥಿ ಪಟ್ಟಿಯಲ್ಲಿ ಅವರುಗಳ ದಾಖಲಾತಿ ಹಾಗೂ ಮುಂದುವರಿಕೆ;

(ii) ವಿಶ್ವವಿದ್ಯಾಲಯದ ಎಲ್ಲಾ ಪದವಿಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ನಿಗದಿಪಡಿಸತಕ್ಕ ವ್ಯಾಸಂಗ ಕ್ರಮಗಳು;

(iii) ಪದವಿಗಳ ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರದಾನ;

(iv) ಸಂಶೋಧನಾ ವೇತನಗಳು (ಫೆಲೋಶಿಪ್), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಪದಕಗಳು ಮತ್ತು ಬಹುಮಾನಗಳನ್ನು ನೀಡಲು ಷರತ್ತುಗಳು;

(v) ಪರೀಕ್ಷೆಗಳನ್ನು ನಡೆಸುವುದು ಹಾಗೂ ಪರೀಕ್ಷೆ ನಡೆಸುವ ಸಂಸ್ಥೆಗಳು, ಪರೀಕ್ಷಕರು, ಪರೀಕ್ಷಾ ಮೇಲ್ವಿಚಾರಕರು, ಟ್ಯಾಬುಲೇಟರ್‌ಗಳು ಮತ್ತು ಮಾಡರೇಟರ್‌ಗಳ ನೇಮಕಾತಿ ಷರತ್ತುಗಳು ಮತ್ತು ವಿಧಾನ ಹಾಗೂ ಅವರ ಕರ್ತವ್ಯಗಳು;

(vi) ವಿಶ್ವವಿದ್ಯಾಲಯದ ಪರೀಕ್ಷೆಗಳಿಗೆ, ಪದವಿಗಳಿಗೆ ಹಾಗೂ ಇತರ ಶೈಕ್ಷಣಿಕ ಪ್ರಶಸ್ತಿಗಳಿಗೆ ಪ್ರವೇಶಕ್ಕೆ ವಿಧಿಸತಕ್ಕ ಶುಲ್ಕ;

(vii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನಲ್ಲಿ ವಿದ್ಯಾರ್ಥಿಗಳ ನಿವಾಸಕ್ಕಾಗಿ ಷರತ್ತುಗಳು;

(viii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಶಿಸ್ತು ಪಾಲನೆ;

(ix) ಈ ಅಧಿನಿಯಮದ ಅಡಿಯಲ್ಲಿನ ಪರಿನಿಯಮಗಳಲ್ಲಿ ಉಪಬಂಧ ಕಲ್ಪಿಸಬಹುದಾಂಥ ಇತರ ಎಲ್ಲಾ ವಿಷಯಗಳು.

**36. ವಿನಿಯಮಗಳ ರಚನೆ ವಿಧಾನ.–** ವಿನಿಯಮಗಳನ್ನು ಶೈಕ್ಷಣಿಕ ಪರಿಷತ್ತು ರಚಿಸತಕ್ಕದ್ದು ಹಾಗೂ ವ್ಯವಸ್ಥಾಪನಾ ಮಂಡಳಿಯು ಅನುಮೋದಿಸತಕ್ಕದ್ದು.

**37. ವಿನಿಯಮಗಳ ತಿದ್ದುಪಡಿಗೆ ಅಧಿಕಾರ.–** ವ್ಯವಸ್ಥಾಪನಾ ಮಂಡಳಿಯ ಅನುಮೋದನೆಯೊಡನೆ ಶೈಕ್ಷಣಿಕ ಪರಿಷತ್ತು ಹೊಸ ವಿನಿಯಮಗಳನ್ನು ಅಥವಾ ಹೆಚ್ಚುವರಿ ವಿನಿಯಮಗಳನ್ನು ರಚಿಸಬಹುದು ಅಥವಾ ವಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ನಿರಸನಗೊಳಿಸಬಹುದು.

**38. ಶುಲ್ಕ ನಿಗಧಿ.–** (1) 9ನೇ ಪ್ರಕರಣದ ಪರಂತುಕದ ಅಡಿಯಲ್ಲಿ ರಾಜ್ಯ ಸರ್ಕಾರದ ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡಲಾದ ಪ್ರವೇಶಗಳಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳಲ್ಲಿನ ಶೇಕಡಾ ನಲವತ್ತರಷ್ಟು ಪ್ರವೇಶಗಳ ಸಂಬಂಧದಲ್ಲಿ ಶುಲ್ಕವು ಸರ್ಕಾರ ಮತ್ತು ವಿಶ್ವವಿದ್ಯಾಲಯವು ಸಮ್ಮತಾಭಿಪ್ರಾಯದ ಒಪ್ಪಂದದ ಪ್ರಕಾರ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) ಅಧಿನಿಯಮ, 2006ರ (2006ರ ಕರ್ನಾಟಕ ಅಧಿನಿಯಮ 8) ಅನುಸಾರವಾಗಿ ಸರ್ಕಾರಿ ಸೀಟುಗಳಿಗಾಗಿ ರಾಜ್ಯ ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸಿದಂತೆ ಇರತಕ್ಕದ್ದು.

(2) ವಿಶ್ವವಿದ್ಯಾಲಯದ ಇತರ ಸೀಟುಗಳಿಗೆ ಸಂಬಂಧಿಸಿದಂತೆ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳು (ಪ್ರವೇಶ, ನಿಯಂತ್ರಣ ಮತ್ತು ಶುಲ್ಕ ನಿಗದಿ) ಅಧಿನಿಯಮ, 2006ರ (2006ರ ಕರ್ನಾಟಕ ಅಧಿನಿಯಮ 8) 6ನೇ ಪ್ರಕರಣದ ಉಪಬಂಧಗಳ ಅನುಸಾರವಾಗಿ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರ ಅಧ್ಯಕ್ಷತೆಯ ಅಡಿಯಲ್ಲಿ ರಚಿಸಲಾದ ಶುಲ್ಕ ನಿಯಂತ್ರಣ ಸಮಿತಿಯ ಮೂಲಕ ಶುಲ್ಕವನ್ನು ನಿಗದಿಪಡಿಸತಕ್ಕದ್ದು. ಈ ಪ್ರಕರಣದ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವನ್ನು ಖಾಸಗಿ ಅನುದಾನರಹಿತ ವೃತ್ತಿಪರ ಶಿಕ್ಷಣ ಸಂಸ್ಥೆ ಎಂದು ಭಾವಿಸತಕ್ಕದ್ದು.

## ಅಧ್ಯಾಯ – VI
## ಸಂಕೀರ್ಣ

**39. ನೌಕರರ ಸೇವಾ ಷರತ್ತುಗಳು.–** (1) ಪರಿನಿಯಮಗಳ ಮತ್ತು ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಥವಾ ನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳು, ಯಾವುದಾದರೂ ಇದ್ದಲ್ಲಿ, ಅವುಗಳಿಗೆ ಒಳಪಟ್ಟು ಪ್ರತಿಯೊಬ್ಬ ನೌಕರನು ಲಿಖಿತ ಕರಾರಿನ ಅಡಿಯಲ್ಲಿ ನೇಮಕಗೊಳ್ಳತಕ್ಕದ್ದು ಮತ್ತು ಅದನ್ನು ವಿಶ್ವವಿದ್ಯಾಲಯದಲ್ಲಿ ಇಟ್ಟುಕೊಳ್ಳತಕ್ಕದ್ದು ಹಾಗೂ ಅದರ ಪ್ರತಿಯನ್ನು ಸಂಬಂಧಪಟ್ಟ ನೌಕರನಿಗೆ ನೀಡತಕ್ಕದ್ದು.

(2) ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಕಾರ್ಯವಿಧಾನಗಳ ಮೂಲಕ ನಿಯಂತ್ರಿಸತಕ್ಕದ್ದು.

(3) ಕರಾರಿನಿಂದಾಗಿ ವಿಶ್ವವಿದ್ಯಾಲಯ ಮತ್ತು ನೌಕರನ ಮಧ್ಯದಲ್ಲಿ ಉದ್ಭವಿಸಬಹುದಾದ ಯಾವುದೇ ವಿವಾದವನ್ನು, ಲಿಖಿತ ಕರಾರಿನಲ್ಲಿ ಉಪಬಂಧಿಸಿದ ವಿಧಾನದಲ್ಲಿ ಹಾಗೂ ಪರಿನಿಯಮಗಳ ಅನುಸಾರವಾಗಿ ಪರಿಹರಿಸತಕ್ಕದ್ದು.

**40. ಮೇಲ್ಮನವಿ ಹಕ್ಕು.–** ವಿಶ್ವವಿದ್ಯಾಲಯವು ತನ್ನ ನೌಕರರ ಅಥವಾ ವಿದ್ಯಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡ ಸಂದರ್ಭದಲ್ಲಿ, ಬಾಧಿತ ನೌಕರ ಅಥವಾ ವಿದ್ಯಾರ್ಥಿಗಳು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಿದಂತೆ ಅಂಥ ಪ್ರಾಧಿಕಾರಕ್ಕೆ ಮೇಲ್ಮನವಿಯ ಹಕ್ಕನ್ನು ಹೊಂದಿರತಕ್ಕದ್ದು. ವಿಶ್ವವಿದ್ಯಾಲಯದ ಹಂತದಲ್ಲಿ ವಿಶ್ವವಿದ್ಯಾಲಯವು ತೊಂದರೆ ನಿವಾರಣಾ ವೇದಿಕೆಯನ್ನು ಒದಗಿಸತಕ್ಕದ್ದು.

**41. ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿ .**– ವಿಶ್ವವಿದ್ಯಾಲಯವು, ತನ್ನ ನೌಕರರ ಪ್ರಯೋಜನಕ್ಕಾಗಿ, ಪರಿನಿಯಮಗಳು ಮತ್ತು ಜಾರಿಯಲ್ಲಿರುವ ಕಾನೂನುಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿಯನ್ನು ರಚಿಸತಕ್ಕದ್ದು ಹಾಗೂ ಅಂಥ ವಿಮಾ ಯೋಜನೆಗಳನ್ನು ಒದಗಿಸತಕ್ಕದ್ದು.

**42. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು.**– ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಇತರ ಸಂಸ್ಥೆಯ ಸದಸ್ಯನಾಗಿ ಯಾವೊಬ್ಬ ವ್ಯಕ್ತಿಯು ಸೂಕ್ತವಾಗಿ ಆಯ್ಕೆಯಾಗಿದ್ದಾನೆಯೇ ಅಥವಾ ನೇಮಕಗೊಂಡಿದ್ದಾನೆಯೇ ಅಥವಾ ಅದಕ್ಕೆ ಅರ್ಹನಾಗಿದ್ದಾನೆಯೇ ಎಂಬ ಯಾವುದೇ ಪ್ರಶ್ನೆ ಉದ್ಭವಿಸಿದರೆ, ಆ ವಿಷಯವನ್ನು ತೀರ್ಮಾನಕ್ಕಾಗಿ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**43. ಸಮಿತಿಗಳ ರಚನೆ.**– 22ನೇ ಪ್ರಕರಣದಲ್ಲಿ ನಮೂದಿಸಿದ ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಅಧಿಕಾರವನ್ನು ಹೊಂದಿರುವ ಅಂಥ ಸದಸ್ಯರನ್ನು ಒಳಗೊಂಡ ಅಂಥ ಪ್ರಾಧಿಕಾರದ ಒಂದು ಸಮಿತಿಯನ್ನು ರಚಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**44. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು.**– ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಂಸ್ಥೆಯ ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ಪೈಕಿ ಯಾವುದೇ ಸ್ಥಾನವು ಆಕಸ್ಮಿಕವಾಗಿ ಖಾಲಿಯಾದರೆ, ಯಾರ ಸ್ಥಾನವು ಖಾಲಿಯಾಗಿ ತುಂಬಬೇಕಾಗಿ ಬಂದಿದೆಯೋ ಆ ಸದಸ್ಯನನ್ನು ಯಾವ ರೀತಿಯಲ್ಲಿ ಆರಿಸಲಾಗಿತ್ತೋ ಅದೇ ರೀತಿಯಲ್ಲಿ ಹೊಸ ಸದಸ್ಯನನ್ನು ಆರಿಸಿ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ಖಾಲಿ ಸ್ಥಾನವನ್ನು ಭರ್ತಿ ಮಾಡಿದ ವ್ಯಕ್ತಿಯು ಆತನು ಯಾವ ಸದಸ್ಯನ ಸ್ಥಾನದಲ್ಲಿ ಭರ್ತಿಯಾಗಿರುವನೋ ಆ ಸದಸ್ಯನು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯನಾಗಿ ಉಳಿಯುತ್ತಿದ್ದ ಬಾಕಿ ಅವಧಿಯವರೆಗೆ ಮಾತ್ರ ಸದಸ್ಯನಾಗಿರತಕ್ಕದ್ದು.

**45. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.**– ಈ ಅಧಿನಿಯಮ ಅಥವಾ ಪರಿನಿಯಮಗಳು ಅಥವಾ ನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ವಿಶ್ವವಿದ್ಯಾಲಯದ ಯಾವೊಬ್ಬ ಅಧಿಕಾರಿ ಅಥವಾ ಇತರ ನೌಕರರ ವಿರುದ್ಧ ಯಾವುದೇ ದಾವೆ ಅಥವಾ ಇತರ ಕಾನೂನು ವ್ಯವಹರಣೆಗಳನ್ನು ನಡೆಸಲು ಅವಕಾಶ ಇರತಕ್ಕದ್ದಲ್ಲ.

**46. ತಾತ್ಕಾಲಿಕ ಉಪಬಂಧಗಳು.**– ಈ ಅಧಿನಿಯಮ ಮತ್ತು ಪರಿನಿಯಮಗಳ ಯಾವುದೇ ಇತರ ಉಪಬಂಧಗಳಲ್ಲಿ ಏನೇ ಇದ್ದರೂ,–

(i) ಮೊದಲ ಕುಲಪತಿ ಮತ್ತು ಸಹಕುಲಪತಿ, ಯಾರಾದರೂ ಇದ್ದರೆ, ಅವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(ii) ಮೊದಲ ಕುಲಸಚಿವರನ್ನು ಮತ್ತು ಮೊದಲ ಹಣಕಾಸು ಅಧಿಕಾರಿಯವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು; ಮತ್ತು

(iii) ಮೊದಲ ವ್ಯವಸ್ಥಾಪನ ಮಂಡಳಿ, ಮೊದಲ ಹಣಕಾಸು ಸಮಿತಿ, ಮೊದಲ ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಹಾಗೂ ಮೊದಲ ಶೈಕ್ಷಣಿಕ ಪರಿಷತ್ತನ್ನು ಕುಲಾಧಿಪತಿಯವರು ರಚಿಸತಕ್ಕದ್ದು.

**47. ಶಾಶ್ವತ ಶಾಸನಬದ್ಧ ದತ್ತಿ ನಿಧಿ.**– (1) ವಿಶ್ವವಿದ್ಯಾಲಯವು, ಕನಿಷ್ಠ ಇಪ್ಪತ್ತೈದು ಕೋಟಿ ರೂಪಾಯಿಗಳನ್ನುಳ್ಳ ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು ಇದರ ಪೈಕಿ ಕನಿಷ್ಠ ಹದಿನೈದು ಕೋಟಿ ರೂಪಾಯಿಗಳು ನಗದು ರೂಪದಲ್ಲಿ ಮತ್ತು ಇನ್ನುಳಿದದ್ದು ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ಇರತಕ್ಕದ್ದು ಮತ್ತು ಇದನ್ನು ತಾನಾಗಿಯೆ ಹೆಚ್ಚಿಸಬಹುದಾಗಿದ್ದು ಆದರೆ ಕಡಿಮೆ ಮಾಡತಕ್ಕದ್ದಲ್ಲ:

ಪರಂತು, ಬೆಂಗಳೂರು ಅಥವಾ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊರಗಿರುವ ವಿಶ್ವವಿದ್ಯಾಲಯದ ಸಂದರ್ಭದಲ್ಲಿ ಕನಿಷ್ಠ ಹತ್ತು ಕೋಟಿ ರೂಪಾಯಿಗಳು ನಗದು ರೂಪದಲ್ಲಿರತಕ್ಕದ್ದು ಮತ್ತು ಉಳಿದ ಐದು ಕೋಟಿ ರೂಪಾಯಿಗಳು ಬ್ಯಾಂಕ್ ಗ್ಯಾರಂಟಿಯ ರೂಪದಲ್ಲಿರತಕ್ಕದ್ದು.

(2) ವಿಶ್ವವಿದ್ಯಾಲಯವು, ರಾಜ್ಯ ಸರ್ಕಾರವು ನಿಯಮಿಸಿದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಹಣವನ್ನು ಹೂಡಲು ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯವು ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಗೆ ವರ್ಗಾವಣೆ ಮಾಡಬಹುದು. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನೂ ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(4) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಿದ ವರಮಾನದ ಶೇಕಡಾ ಎಪ್ಪತ್ತೈದರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತೈದರಷ್ಟನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**48. ವಿಶ್ವವಿದ್ಯಾಲಯದ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ನಿಧಿಗಳನ್ನು ಒಳಗೊಂಡ ವಿಶ್ವವಿದ್ಯಾಲಯದ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದು ಕಾಲಕಾಲಕ್ಕೆ ಸ್ವೀಕರಿಸಬಹುದಾದ ದೇಣಿಗೆಗಳು ಮತ್ತು ಇತರ ನಿಧಿಗಳನ್ನು ಒಳಗೊಂಡಿರತಕ್ಕದ್ದು.

(2) ವಿಶ್ವವಿದ್ಯಾಲಯವು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ವಿಶ್ವವಿದ್ಯಾಲಯದ ದತ್ತಿನಿಧಿಯನ್ನು ಹೂಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯ ದತ್ತಿ ನಿಧಿಯು, ವಿಶ್ವವಿದ್ಯಾಲಯವು ತನ್ನ ಸಾಮಾಜಿಕ ಧ್ಯೇಯೋದ್ದೇಶಗಳನ್ನು ನೆರವೇರಿಸುವ ಸಂದರ್ಭದಲ್ಲಿ ಮತ್ತು/ಅಥವಾ ಮುಂಗಾಣದ ಸನ್ನಿವೇಶದಲ್ಲಿ ಉದ್ಭವಿಸಬಹುದಾದ ಹಣಕಾಸು ಸವಾಲುಗಳಿಂದ ತನ್ನನ್ನು ರಕ್ಷಿಸಿಕೊಳ್ಳುವುದಕ್ಕಾಗಿ, ಸ್ವಇಚ್ಛೆಯಿಂದ ನಿರ್ವಹಿಸಿಕೊಂಡು ಬರಲು ಮತ್ತು ಜವಾಬ್ದಾರಿಯಿಂದ ಹಣ ಹೂಡಿಕೆ ಮಾಡಲು ಇಚ್ಛೆಯುಳ್ಳವರಾಗಿ ಸ್ವಯಂ ವಿಧಿಸಿಕೊಂಡ ನಿಧಿಯಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಗೆ ವರ್ಗಾಯಿಸಬಹುದು. ವಿಶ್ವವಿದ್ಯಾಲಯದ ಸಮಾಪಣೆಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನು ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(5) ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಬರುವ ವರಮಾನದ ಶೇಕಡಾ ಎಂಭತ್ತರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸದ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತರಷ್ಟನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**49. ಸಾಮಾನ್ಯ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಸಾಮಾನ್ಯ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯವು ವಿಧಿಸಬಹುದಾದ ಎಲ್ಲಾ ಶುಲ್ಕಗಳು;

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವುದೇ ಇತರ ಮೂಲದಿಂದ ಸ್ವೀಕರಿಸಲಾದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ದೇಣಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು ಅಥವಾ ವಂತಿಗೆಗಳು;

(2) ಸಾಮಾನ್ಯ ನಿಧಿಗೆ ಜಮಾ ಮಾಡುವ ನಿಧಿಗಳನ್ನು ವಿಶ್ವವಿದ್ಯಾಲಯದ ಎಲ್ಲಾ ಆವರ್ತಕ ವೆಚ್ಚಗಳನ್ನು ಭರಿಸಲು ಉಪಯೋಗಿಸಿಕೊಳ್ಳತಕ್ಕದ್ದು.

**50. ಅಭಿವೃದ್ಧಿ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಅಭಿವೃದ್ಧಿ ನಿಧಿಯನ್ನು ಸಹ ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ವಿದ್ಯಾರ್ಥಿಗಳಿಂದ ವಿಧಿಸಬಹುದಾದ ಅಭಿವೃದ್ಧಿ ಶುಲ್ಕಗಳು;

(ii) ವಿಶ್ವವಿದ್ಯಾಲಯದ ಅಭಿವೃದ್ಧಿಯ ಉದ್ದೇಶಗಳಿಗಾಗಿ ಯಾವುದೇ ಇತರ ಮೂಲಗಳಿಂದ ಸ್ವೀಕರಿಸಿದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ವಂತಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು ಅಥವಾ ವಂತಿಗೆಗಳು; ಮತ್ತು

(v) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಲಾದ ಎಲ್ಲಾ ವರಮಾನಗಳು.

(2) ಅಭಿವೃದ್ಧಿ ನಿಧಿಗೆ ಕಾಲಕಾಲಕ್ಕೆ ಜಮಾ ಮಾಡಿದ ನಿಧಿಯನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಉಪಯೋಗಿಸಿಕೊಳ್ಳತಕ್ಕದ್ದು.

**51. ನಿಧಿಗಳ ನಿರ್ವಹಣೆ.–** 47, 48, 49 ಮತ್ತು 50ನೇ ಪ್ರಕರಣಗಳಡಿಯಲ್ಲಿ ಸ್ಥಾಪಿಸಲಾದ ನಿಧಿಗಳನ್ನು ಪ್ರಬಂಧಕ ಮಂಡಳಿಯ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಕ್ಕೆ ಒಳಪಟ್ಟು ರಾಜ್ಯ ಸರ್ಕಾರವು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ನಿಯಂತ್ರಿಸತಕ್ಕದ್ದು ಹಾಗೂ ನಿರ್ವಹಿಸತಕ್ಕದ್ದು.

**52. ವಾರ್ಷಿಕ ವರದಿ.–** (1) ವಿಶ್ವವಿದ್ಯಾಲಯದ ವಾರ್ಷಿಕ ವರದಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ಅದರ ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಪ್ರಬಂಧಕ ಮಂಡಳಿಯು ವಾರ್ಷಿಕ ವರದಿಯನ್ನು ತನ್ನ ಸಭೆಯಲ್ಲಿ ಪರಿಗಣಿಸತಕ್ಕದ್ದು ಹಾಗೂ ಅದನ್ನು ಮಾರ್ಪಾಡುಗಳೊಡನೆ ಅಥವಾ ಮಾರ್ಪಾಡುಗಳಿಲ್ಲದೆ ಅನುಮೋದಿಸಬಹುದು.

(3) ಪ್ರಬಂಧಕ ಮಂಡಳಿಯು ಸೂಕ್ತವಾಗಿ ಅನುಮೋದಿಸಿದ ವಾರ್ಷಿಕ ವರದಿಯ ಒಂದು ಪ್ರತಿಯನ್ನು ಪ್ರತಿವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ಡಿಸೆಂಬರ್ 31ಕ್ಕೆ ಮೊದಲು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**53. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.–** (1) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕ ಪತ್ರ ಮತ್ತು ಜಮಾ ಖರ್ಚು ಪಟ್ಟಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯಕ್ಕೆ ಎಲ್ಲಾ ಮೂಲಗಳಿಂದ ಪ್ರಾಪ್ತವಾಗುವ ಅಥವಾ ಸ್ವೀಕರಿಸಲಾಗುವ ಎಲ್ಲಾ ನಿಧಿಗಳು ಹಾಗೂ ವಿತರಿಸಿದ ಅಥವಾ ಸಂದಾಯ ಮಾಡಿದ ಎಲ್ಲಾ ಮೊಬಲಗುಗಳನ್ನು ವಿಶ್ವವಿದ್ಯಾಲಯವು ನಿರ್ವಹಿಸುವ ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕಪತ್ರಗಳನ್ನು ಪ್ರತಿ ವರ್ಷವೂ ಭಾರತದ ಚಾರ್ಟೆಡ್ ಅಕೌಂಟೆಂಟ್‌ಗಳ ಸಂಸ್ಥೆಯ ಸದಸ್ಯರಾಗಿರುವ ಒಬ್ಬ ಲೆಕ್ಕಪರಿಶೋಧಕರಿಂದ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಲೆಕ್ಕಪರಿಶೋಧನಾ ವರದಿಯೊಡನೆ, ಪ್ರತಿ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ನವೆಂಬರ್ 30ಕ್ಕೆ ಮೊದಲು ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(4) ವಾರ್ಷಿಕ ಲೆಕ್ಕಪತ್ರಗಳು, ಜಮಾಖರ್ಚು ಪಟ್ಟಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಪ್ರಬಂಧಕ ಮಂಡಳಿಯು ತನ್ನ ಸಭೆಯಲ್ಲಿ ಪರ್ಯಾಲೋಚಿಸತಕ್ಕದ್ದು ಮತ್ತು ಪ್ರಬಂಧಕ ಮಂಡಳಿಯು ಅದನ್ನು ತನ್ನ ಅಭಿಪ್ರಾಯಗಳೊಡನೆ ಸಂದರ್ಶಕರಿಗೆ ಹಾಗೂ ಸರ್ಕಾರಕ್ಕೆ ಪ್ರತಿ ವರ್ಷದ ಡಿಸೆಂಬರ್ 31ಕ್ಕೆ ಮೊದಲು ಕಳುಹಿಸತಕ್ಕದ್ದು.

(5) ಲೆಕ್ಕಪರಿಶೋಧಕರ ವರದಿಯಲ್ಲಿ ಯಾವುದೇ ಮುಖ್ಯ ಬದಲಾವಣೆ ಇದ್ದ ಸಂದರ್ಭದಲ್ಲಿ, ಅವುಗಳನ್ನು ಸರಿಪಡಿಸಲು, ರಾಜ್ಯ ಸರ್ಕಾರವು ವಿಶ್ವವಿದ್ಯಾಲಯಕ್ಕೆ ನಿರ್ದೇಶನಗಳನ್ನು ಹೊರಡಿಬಹುದು ಮತ್ತು ಅಂಥ ನಿರ್ದೇಶನಗಳು ವಿಶ್ವವಿದ್ಯಾಲಯದ ಮೇಲೆ ಬಂಧನಕಾರಿಯಾಗಿರತಕ್ಕದ್ದು.

**54. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಮಿತಿಯ ಯಾವುದೇ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ ಅಥವಾ ಗೊತ್ತುವಳಿಯು ಅಥವಾ ವಿಶ್ವವಿದ್ಯಾಲಯದ ಸ್ವಾಧೀನದಲ್ಲಿರುವ ಇತರ ದಾಖಲೆಗಳು ಅಥವಾ ವಿಶ್ವವಿದ್ಯಾಲಯವು ಯುಕ್ತವಾಗಿ ನಿರ್ವಹಿಸುವ ಯಾವುದೇ ರಿಜಿಸ್ಟರ್‌ನಲ್ಲಿಯ ಯಾವುದೇ ನಮೂದುಗಳ ಪ್ರತಿಯನ್ನು, ಅದರ ಮೇಲೆ ಕುಲಸಚಿವರು ಪ್ರಮಾಣೀಕರಿಸಿದ್ದರೆ, ಅದನ್ನು ಅಂಥ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ, ಗೊತ್ತುವಳಿ ಅಥವಾ ದಾಖಲೆ ಅಥವಾ ರಿಜಿಸ್ಟರ್‌ನಲ್ಲಿ ಇರುವ ನಮೂದನ್ನು ಮೇಲ್ನೋಟದ ಸಾಕ್ಷ್ಯವೆಂಬುದಾಗಿ ಸ್ವೀಕರಿಸತಕ್ಕದ್ದು ಮತ್ತು ವಿಷಯಗಳ ಸಾಕ್ಷಿಯಾಗಿ ಅಂಗೀಕರಿಸತಕ್ಕದ್ದು ಹಾಗೂ ಮೂಲ ದಾಖಲೆಗಳನ್ನೇ ಸಲ್ಲಿಸಿದ್ದರೆ ಅದನ್ನು, ದಾಖಲಿಸಿರುವ ವಿಷಯಗಳು ಮತ್ತು ವಹಿವಾಟುಗಳ ಸಾಕ್ಷ್ಯವಾಗಿ ಅಂಗೀಕರಿಸಲಾಗುತ್ತಿತ್ತೋ, ಅದೇ ರೀತಿಯಲ್ಲಿ ಇವನ್ನೂ ಸಾಕ್ಷ್ಯವಾಗಿ ಅಂಗೀಕರಿಸತಕ್ಕದ್ದು.

**55. ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ.–** ರಾಜ್ಯಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಥವಾ ಅದರಲ್ಲಿ ಇರುವ ಯಾವುವೇ ಉಪಬಂಧಗಳನ್ನು ಅಥವಾ ಅದರಡಿಯಲ್ಲಿ ರಚಿಸಿದ ಯಾವುವೇ ನಿಯಮಗಳು ಅಥವಾ ಆದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿರ್ದೇಶನ ನೀಡುವುದು ಅವಶ್ಯವೆಂದು ಅಥವಾ ಉಚಿತವೆಂದು ಅಭಿಪ್ರಾಯಪಟ್ಟಲ್ಲಿ ಅದು ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ ಅಥವಾ ಸಂದರ್ಭಾನುಸಾರವಾಗಿ ವ್ಯವಸ್ಥಾಪನಾ ಮಂಡಳಿಯು ಅಂಥ ಪ್ರತಿಯೊಂದು ನಿರ್ದೇಶನವನ್ನು ಪಾಲಿಸತಕ್ಕದ್ದು.

**56. ದಂಡಗಳು.–** (1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿತವಾದ ನಿಯಮಗಳು ಉಪಬಂಧಗಳನ್ನು ಅಥವಾ ಯಾವುದೇ ಪರೀಕ್ಷಾ ವಿಷಯಗಳನ್ನು ಅಥವಾ ಪದವಿಗಳನ್ನು ನೀಡುವುದಕ್ಕೆ ಅಥವಾ ಅಂಕಪಟ್ಟಿಗಳನ್ನು ನೀಡುವುದಕ್ಕೆ ಸಂಬಂಧಪಟ್ಟ ವಿಷಯಗಳಲ್ಲಿ ಉಲ್ಲಂಘನೆಗಳನ್ನು ಮಾಡುವ ಯಾವೊಬ್ಬ ವ್ಯಕ್ತಿಯು, ಅಪರಾಧ ನಿರ್ಣಯವಾದ ಮೇಲೆ, ಐವತ್ತು ಸಾವಿರ ರೂಪಾಯಿಗಳಿಗೆ ಕಡಿಮೆಯಲ್ಲದ ಆದರೆ ಹತ್ತು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಆರು ತಿಂಗಳ ಅವಧಿಗಿಂತ ಕಡಿಮೆಯಲ್ಲದ ಆದರೆ ಎರಡು ವರ್ಷಗಳ ಅವಧಿಯವರೆಗೆ ವಿಸ್ತರಿಸಬಹುದಾದ ಕಾರಾವಾಸದಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು:

ಪರಂತು, ಅಪರಾಧವನ್ನು ಎಸಗುವಲ್ಲಿ ವಿಶ್ವವಿದ್ಯಾಲಯವೂ ಸಹ ಒಳಗೊಂಡಿರುವಲ್ಲಿ, ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಈ ಅಧಿನಿಯಮದ ಅಡಿಯಲ್ಲಿ ಮಂಜೂರು ಮಾಡಲಾದ ಅನುಮತಿ ಪತ್ರವನ್ನು ಹಿಂತೆಗೆದುಕೊಳ್ಳತಕ್ಕದ್ದು.

(2) ಈ ಪ್ರಕರಣದ ಅಡಿಯಲ್ಲಿಯ ದಂಡವನ್ನು ಇತರ ಯಾವುದೇ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಲಾದ ದಂಡಕ್ಕೆ ಬಾಧಕವಾಗದಂತೆ ವಿಧಿಸಬಹುದು.

**57. ಪ್ರವೇಶಿಸುವ ಮತ್ತು ಪರಿಶೋಧಿಸುವ ಅಧಿಕಾರ.–** ಈ ಉದ್ದೇಶಕ್ಕಾಗಿ, ರಾಜ್ಯಸರ್ಕಾರದಿಂದ ಪ್ರಾಧಿಕೃತಗೊಂಡ 'ಎ' ಸಮೂಹದ ಅಧಿಕಾರಿ ದರ್ಜೆಗಿಂತ ಕಡಿಮೆಯಿಲ್ಲದ ದರ್ಜೆಯ ಯಾವೊಬ್ಬ ಅಧಿಕಾರಿಯು, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಶನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ 37) ಅಡಿಯಲ್ಲಿ ನಿರ್ದಿಷ್ಟಪಡಿಸಿರಬಹುದಾದ ಅಂಥ ಷರತ್ತುಗಳಿಗೆ ಒಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ, ಆ ಅಧಿನಿಯಮದ

9ನೇ ಪ್ರಕರಣದ ಅಡಿಯಲ್ಲಿ ಉಪಬಂಧಿಸಲಾದಂತಹವೇ ಅಧಿಕಾರಗಳನ್ನು ಚಲಾಯಿಸಲು ಮತ್ತು ಪ್ರಕಾರ್ಯಗಳನ್ನು ನೆರವೇರಿಸಲು ಅಧಿಕೃತನಾದ ಅಧಿಕಾರಿ ಎಂಬುದಾಗಿ ಭಾವಿಸತಕ್ಕದ್ದು.

**58. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ನಿರ್ದೇಶನವನ್ನು ನೀಡುವ ಅಧಿಕಾರ.–** (1) ವಿಶ್ವವಿದ್ಯಾಲಯವು ತನ್ನ ರಚನೆ ಅಥವಾ ನಿಗಮನವನ್ನು ನಿಯಂತ್ರಿಸುವ ಕಾನೂನಿಗೆ ಅನುಸಾರವಾಗಿ ತನ್ನ ಸಮಾಪನವನ್ನು ಉದ್ದೇಶಿಸಿದ್ದಲ್ಲಿ, ಅದು ಕನಿಷ್ಠ ಆರು ತಿಂಗಳ ಲಿಖಿತ ಪೂರ್ವ ಸೂಚನೆಯನ್ನು (ನೋಟಿಸು) ಸರ್ಕಾರಕ್ಕೆ ನೀಡತಕ್ಕದ್ದು.

(2) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಈ ಕೆಳಗಿನವುಗಳ ಬಗ್ಗೆ, ಎಂದರೆ:-

(i) ಪದವಿಯನ್ನು ನೀಡುವುದಕ್ಕಾಗಿ ಬೋಧನೆಯ ಗುಣಮಟ್ಟ;

(ii) ಶಿಕ್ಷಣದ ಗುಣಮಟ್ಟ;

(iii) ಉನ್ನತ ಶಿಕ್ಷಣದ ವ್ಯಾಪಾರೀಕರಣವನ್ನು ತಡೆಗಟ್ಟುವುದು;

(iv) ಅಧಿನಿಯಮದ ಉಪಬಂಧಗಳ ಉಲ್ಲಂಘನೆಯ ಬಗ್ಗೆ, ಯಾವುದಾದರೂ ಇದ್ದಲ್ಲಿ,

– ಇವುಗಳ ಬಗ್ಗೆ ನಿಯತಕಾಲಿಕ ಪರಿವೀಕ್ಷಣೆಯನ್ನು ನಡೆಸತಕ್ಕದ್ದು ಮತ್ತು ಸರ್ಕಾರಕ್ಕೆ ವರದಿಯನ್ನು ಕಳುಹಿಸತಕ್ಕದ್ದು.

(3) ದುರ್ವ್ಯವಹರಣೆ, ದುರಾಡಳಿತ ಮತ್ತು ಅಶಿಸ್ತು ಆಗಿದೆ ಎಂಬುದನ್ನು ಗುರುತಿಸಿದರೆ, ಸರ್ಕಾರವು, ವಿಶ್ವವಿದ್ಯಾಲಯದ ಆಡಳಿತವರ್ಗದವರಿಗೆ ಆಡಳಿತವನ್ನು ಸರಿಪಡಿಸಬೇಕೆಂದು ನಿರ್ದೇಶನಗಳನ್ನು ನೀಡತಕ್ಕದ್ದು. ನಿಯಮಿಸಬಹುದಾದ ಅಂಥ ಅವಧಿಯೊಳಗೆ ಆ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುವ ಹಕ್ಕು ಸರ್ಕಾರದಲ್ಲಿ ನಿಹಿತವಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ವಿಧಾನವು, ಸರ್ಕಾರವು ಈ ಸಂಬಂಧದಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು:

ಪರಂತು, ವಿಶ್ವವಿದ್ಯಾಲಯವು ತನ್ನ ಕಾರಣಗಳನ್ನು ಹೇಳಿಕೊಳ್ಳಲು ಸಮಂಜಸ ಅವಕಾಶಗಳನ್ನು ನೀಡಿದ ಹೊರತು ಅಂಥ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

(5) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೋಟಿಸನ್ನು ಸ್ವೀಕರಿಸಿದ ಮೇಲೆ, ಸರ್ಕಾರವು ಸಂಬಂಧಿಸಿದ ನಿಯಂತ್ರಣಾ ಪ್ರಾಧಿಕಾರದೊಡನೆ ಸಮಾಲೋಚಿಸಿ, ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ಅಥವಾ ವ್ಯಾಸಂಗ ಕ್ರಮವನ್ನು ಪರಿಸಮಾಪನಗೊಳಿಸಲು ಉದ್ದೇಶಿಸಿದ ದಿನಾಂಕದಿಂದ, ವಿಶ್ವವಿದ್ಯಾಲಯದಲ್ಲಿ ನಿಯತ ವ್ಯಾಸಂಗ ಕ್ರಮಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕೊನೆಯ ತಂಡ (ಬ್ಯಾಚ್) ತನ್ನ ವ್ಯಾಸಂಗ ಕ್ರಮವನ್ನು ಮುಗಿಸುವವರೆಗೆ ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು.

**59. ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು.–** (1) 58ನೇ ಪ್ರಕರಣದ (5)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ಅದರ ಆಡಳಿತಾತ್ಮಕ ವೆಚ್ಚಗಳನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಭರಿಸತಕ್ಕದ್ದು.

(2) ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ವಿಶ್ವವಿದ್ಯಾಲಯದ ವೆಚ್ಚವನ್ನು ಭರಿಸಲು 47, 48, 49, ಮತ್ತು 50ನೇ ಪ್ರಕರಣಗಳ ಅಡಿಯಲ್ಲಿ ಉಲ್ಲೇಖಿಸಲಾದ ನಿಧಿಯು ಸಾಕಷ್ಟು ಇಲ್ಲದಿದ್ದಲ್ಲಿ, ಅಂಥ ವೆಚ್ಚವನ್ನು ಸರ್ಕಾರವು, ವಿಶ್ವವಿದ್ಯಾಲಯದ ಸ್ವತ್ತುಗಳು ಮತ್ತು ಆಸ್ತಿಗಳನ್ನು ವಿಲೇ ಮಾಡುವ ಮೂಲಕ ಭರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಸಮಾಪನೆಯು ದುರ್ವ್ಯವಹರಣೆ ಅಥವಾ ದುರಾಡಳಿತದ ಕಾರಣಗಳಿಗಾಗಿ ಆಗಿದ್ದರೆ, ಸರ್ಕಾರವು ಅಂಥ ದುರ್ವ್ಯವಹಾರಕ್ಕೆ ಅಥವಾ ದುರಾಡಳಿತಕ್ಕೆ ಹೊಣೆಯಾಗಿರುವ ವ್ಯಕ್ತಿಗಳನ್ನು ಗುರುತಿಸುವ ಮತ್ತು ಅವರ ಮೇಲೆ ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ದಂಡನೆಯನ್ನು ವಿಧಿಸಲು ಸ್ವತಂತ್ರವಾಗಿರತಕ್ಕದ್ದು.

**60. ತೊಂದರೆಗಳ ನಿವಾರಣೆಗೆ ಅಧಿಕಾರ.–** (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಅಥವಾ ಆದೇಶದ ಮೂಲಕ ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಐದು ವರ್ಷಗಳು ಮುಕ್ತಾಯವಾದ ತರುವಾಯ ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಅಧಿಸೂಚನೆ ಅಥವಾ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

**61. ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ.–** (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಉಭಯ ಸದನಗಳು ಒಪ್ಪಿದರೆ ತದನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ಧತಿಯು ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವನ್ನು ಉಂಟುಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಕೆ.ದ್ವಾರಕನಾಥ್ ಬಾಬು**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು (ಪಿ7) ಪ್ರತಿಗಳು: 400

**2013 ರ ಕರ್ನಾಟಕ ಅಧಿನಿಯಮ ಸಂಖ್ಯೆ: 44**
**ಅರ್ಕ ವಿಶ್ವವಿದ್ಯಾಲಯ ಅಧಿನಿಯಮ, 2012**
**ಪ್ರಕರಣಗಳ ಪಟ್ಟಿ**

**ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ**
**ಪ್ರಕರಣಗಳು:**

ಅಧ್ಯಾಯ – I
ಪ್ರಾರಂಭಿಕ

1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ
2. ಪರಿಭಾಷೆಗಳು

ಅಧ್ಯಾಯ– II
ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

3. ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ
4. ವಿಶ್ವವಿದ್ಯಾಲಯದ ಸ್ಥಾಪನೆ
5. ಅನುದಾನಗಳು ಮತ್ತು ಹಣಕಾಸು ನೆರವು
6. ಘಟಕ ಕಾಲೇಜು, ಪ್ರಾದೇಶಿಕ ಕೇಂದ್ರಗಳು ಅಥವಾ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದಕ್ಕೆ ಅಧಿಕಾರ
7. ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು
8. ವಿಶ್ವವಿದ್ಯಾಲಯದ ಅಧಿಕಾರಗಳು
9. ವಿಶ್ವವಿದ್ಯಾಲಯವು ಎಲ್ಲಾ ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲರಿಗೂ ಮುಕ್ತವಾಗಿರತಕ್ಕದ್ದು
10. ರಾಷ್ಟ್ರೀಯ ಅಧಿಮಾನ್ಯತೆ
11. ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು

ಅಧ್ಯಾಯ – III
ವಿಶ್ವವಿದ್ಯಾಲಯದ ಅಧಿಕಾರಿಗಳು

12. ವಿಶ್ವವಿದ್ಯಾಲಯದ ಅಧಿಕಾರಿಗಳು
13. ಸಂದರ್ಶಕರು
14. ಸಹ–ಸಂದರ್ಶಕರು
15. ಕುಲಾಧಿಪತಿಗಳು
16. ಕುಲಪತಿಗಳು
17. ಸಹಕುಲಪತಿಗಳು
18. ವ್ಯಾಸಂಗ ವಿಭಾಗಗಳ ಡೀನ್‌ಗಳು
19. ಕುಲಸಚಿವರು
20. ಹಣಕಾಸು ಅಧಿಕಾರಿ
21. ಇತರ ಅಧಿಕಾರಿಗಳು

ಅಧ್ಯಾಯ – IV
ವಿಶ್ವವಿದ್ಯಾಲಯದ ಪ್ರಾಧಿಕಾರಗಳು

22. ವಿಶ್ವವಿದ್ಯಾಲಯದ ಪ್ರಾಧಿಕಾರಗಳು
23. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು
24. ವ್ಯವಸ್ಥಾಪನಾ ಮಂಡಳಿ
25. ಶೈಕ್ಷಣಿಕ ಪರಿಷತ್ತು
26. ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು
27. ಹಣಕಾಸು ಸಮಿತಿ
28. ಇತರ ಪ್ರಾಧಿಕಾರಗಳು
29. ಒಂದು ಪ್ರಾಧಿಕಾರದ ಅಥವಾ ಸಂಸ್ಥೆಯ ಸದಸ್ಯತ್ವಕ್ಕೆ ಅನರ್ಹತೆ
30. ಖಾಲಿಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ

31. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು

## ಅಧ್ಯಾಯ – V

## ಪರಿನಿಯಮಗಳು ಮತ್ತು ವಿನಿಯಮಗಳು

32. ಪರಿನಿಯಮಗಳು
33. ಪರಿನಿಯಮಗಳ ರಚನೆ ವಿಧಾನ
34. ಪರಿನಿಯಮಗಳ ತಿದ್ದುಪಡಿಯ ಅಧಿಕಾರ
35. ವಿನಿಯಮಗಳು
36. ವಿನಿಯಮಗಳ ರಚನೆ ವಿಧಾನ
37. ವಿನಿಯಮಗಳ ತಿದ್ದುಪಡಿಗೆ ಅಧಿಕಾರ
38. ಶುಲ್ಕ ನಿಯಂತ್ರಣ ಸಮಿತಿ

## ಅಧ್ಯಾಯ – VI

## ಸಂಕೀರ್ಣ

39. ನೌಕರರ ಸೇವಾ ಷರತ್ತುಗಳು
40. ಮೇಲ್ಮನವಿ ಹಕ್ಕು
41. ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿ
42. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು
43. ಸಮಿತಿಗಳ ರಚನೆ
44. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು
45. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ
46. ತಾತ್ಕಾಲಿಕ ಉಪಬಂಧಗಳು
47. ಶಾಶ್ವತ ಶಾಸನಬದ್ಧ ದತ್ತಿ ನಿಧಿ
48. ವಿಶ್ವವಿದ್ಯಾಲಯದ ದತ್ತಿ ನಿಧಿ
49. ಸಾಮಾನ್ಯ ನಿಧಿ
50. ಅಭಿವೃದ್ಧಿ ನಿಧಿ
51. ನಿಧಿಗಳ ನಿರ್ವಹಣೆ
52. ವಾರ್ಷಿಕ ವರದಿ
53. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ
54. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ
55. ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ
56. ದಂಡಗಳು
57. ಪ್ರವೇಶಿಸುವ ಮತ್ತು ಪರಿಶೋಧಿಸುವ ಅಧಿಕಾರ
58. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ನಿರ್ದೇಶನವನ್ನು ನೀಡುವ ಅಧಿಕಾರ
59. ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು
60. ತೊಂದರೆಗಳ ನಿವಾರಣೆಗೆ ಅಧಿಕಾರ
61. ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

**2013ರ ಅಧಿನಿಯಮ ಸಂಖ್ಯೆ 44.–** ಅರ್ಕ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ನ್ಯಾಸವು ರಾಜ್ಯದಲ್ಲಿ ಖಾಸಗಿ ವಿಶ್ವವಿದ್ಯಾಲಯವನ್ನು ಸ್ಥಾಪಿಸಲು ಮುಂದೆ ಬಂದಿದೆ. ಪ್ರಖ್ಯಾತ ಸಂಸ್ಥೆಯೊಂದರಿಂದ ಸ್ಥಾಪಿತವಾಗುವ ಖಾಸಗಿ ವಿಶ್ವವಿದ್ಯಾಲಯವು ಶಿಕ್ಷಣ ಆಕಾಂಕ್ಷಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣವನ್ನು ವಿಸ್ತರಿಸುವುದಕ್ಕೆ ಖಚಿತವಾಗಿ ನೆರವಾಗುತ್ತದೆ. ಇದು ಕರ್ನಾಟಕದಲ್ಲಿ ಉನ್ನತ ಶಿಕ್ಷಣ ವಲಯದಲ್ಲಿ ಪ್ರಸ್ತುತ ಶೇಕಡಾ 11.5ಕ್ಕೆ ನಿಂತಿರುವ ಒಟ್ಟು ದಾಖಲಾತಿ ಪ್ರಮಾಣದ ಏರಿಕೆಯನ್ನೂ ಸಹ ತ್ವರಿತಗೊಳಿಸುತ್ತದೆ.

ಮೇಲ್ಕಂಡ ಅಂಶಗಳ ದೃಷ್ಟಿಯಿಂದ, ಅರ್ಕ ವಿಶ್ವವಿದ್ಯಾಲಯದ ಸ್ಥಾಪನೆಗೆ ಉಪಬಂಧ ಕಲ್ಪಿಸುವುದು ಅವಶ್ಯವೆಂದು ಪರಿಗಣಿಸಲಾಗಿದೆ.

ಈ ಖಾಸಗಿ ವಿಶ್ವವಿದ್ಯಾಲಯವು ಕಲೆ, ವಿಜ್ಞಾನ, ವಾಣಿಜ್ಯ, ಕಾನೂನು, ಇಂಜಿನಿಯರಿಂಗ್, ನಗರ ಯೋಜನೆ, ವ್ಯವಸ್ಥಾಪನೆ, ಆತಿಥ್ಯ, ಸಂಗೀತ, ಭಾಷಾ ವಿಜ್ಞಾನ ಕ್ಷೇತ್ರಗಳಲ್ಲಿ ಮತ್ತು ತತ್ಸಂಬಂಧಿ ವಲಯಗಳಲ್ಲಿ ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿನ ಬೋಧನೆ, ತರಬೇತಿ, ಸಂಶೋಧನೆ ಮತ್ತು ಅಭಿವೃದ್ಧಿಯ ಮೇಲೆ ಬೆಳಕನ್ನು ಚೆಲ್ಲುತ್ತದೆ.

ಅದಕ್ಕಾಗಿ ಈ ವಿಧೇಯಕ.

(2012ರ ವಿಧಾನಸಭೆಯ ವಿಧೇಯಕ ಸಂಖ್ಯೆ:13, ಕಡತ ಸಂಖ್ಯೆ:ಸಂವ್ಯಶಾಇ 12 ಶಾಸನ 2012)

(ಭಾರತ ಸಂವಿಧಾನದ 7ನೇ ಅನುಸೂಚಿಯ 3ನೇ ಪಟ್ಟಿಯ 25ನೆಯ ನಮೂದನೆಯಡಿಯಲ್ಲಿ ಬರುತ್ತದೆ.)

---

**2013 ರ ಕರ್ನಾಟಕ ಅಧಿನಿಯಮ ಸಂಖ್ಯೆ: 44**

(2013ರ ಮಾರ್ಚ್ ಮಾಹೆಯ ಇಪ್ಪತ್ತೈದನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಅರ್ಕ ವಿಶ್ವವಿದ್ಯಾಲಯ ಅಧಿನಿಯಮ, 2012**

(2013ರ ಮಾರ್ಚ್ ಮಾಹೆಯ ಹದಿಮೂರನೇ ದಿನಾಂಕದಂದು ರಾಜ್ಯಪಾಲರ ಅನುಮತಿಯನ್ನು ಪಡೆಯಲಾಗಿದೆ)

ಕಲೆ, ವಿಜ್ಞಾನ, ವಾಣಿಜ್ಯ, ಕಾನೂನು, ಇಂಜಿನಿಯರಿಂಗ್, ನಗರ ಯೋಜನೆ, ವ್ಯವಸ್ಥಾಪನೆ, ಆತಿಥ್ಯ, ಸಂಗೀತ, ಭಾಷಾ ವಿಜ್ಞಾನ ಮತ್ತು ತತ್ಸಂಬಂಧಿ ವಲಯಗಳಲ್ಲಿ ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಉತ್ತೇಜಿಸಲು ಮತ್ತು ಕೈಗೊಳ್ಳಲು ಖಾಸಗಿ ವಲಯದಲ್ಲಿ ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವೊಂದನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದಕ್ಕಾಗಿ ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕಲೆ, ವಿಜ್ಞಾನ, ವಾಣಿಜ್ಯ, ಕಾನೂನು, ಇಂಜಿನಿಯರಿಂಗ್, ನಗರ ಯೋಜನೆ, ವ್ಯವಸ್ಥಾಪನೆ, ಆತಿಥ್ಯ, ಸಂಗೀತ, ಭಾಷಾ ವಿಜ್ಞಾನ ಮತ್ತು ತತ್ಸಂಬಂಧಿ ವಲಯಗಳಲ್ಲಿ ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಉತ್ತೇಜಿಸಲು ಮತ್ತು ಕೈಗೊಳ್ಳಲು ಖಾಸಗಿ ವಲಯದಲ್ಲಿ ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವೊಂದನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೊಂದನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**ಅಧ್ಯಾಯ – I**

**ಪ್ರಾರಂಭಿಕ**

1. **ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.**- (1) ಈ ಅಧಿನಿಯಮವನ್ನು ಅರ್ಕ ವಿಶ್ವವಿದ್ಯಾಲಯ ಅಧಿನಿಯಮ, 2012 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

2. **ಪರಿಭಾಷೆಗಳು.**- ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) "ಶೈಕ್ಷಣಿಕ ಪರಿಷತ್ತು (ಅಕೆಡೆಮಿಕ್ ಕೌನ್ಸಿಲ್)" ಎಂದರೆ, 25ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿಸಲಾದ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು;

(ಬಿ) "ಕಾರ್ಯಸೂಚಿ ವಿಷಯಗಳು", ಎಂದರೆ, ಪರಿನಿಯಮಗಳಲ್ಲಿ ಹೆಸರಿಸಬಹುದಾದ ಮತ್ತು ಒಂದು ಸಭೆಯಲ್ಲಿ ಆ ವಿಷಯಗಳನ್ನು ಮತ್ತು ಕಲಾಪಗಳನ್ನು ಅನುಮೋದಿಸಬಹುದೆಂದು ತಮ್ಮ ಸಮ್ಮತಿ ಸೂಚಿಸಿ ಕುಲಾಧಿಪತಿಯವರು ಮುಂಚಿತವಾಗಿಯೇ ಲಿಖಿತ ಅನುಮೋದನೆಯನ್ನು ಕೊಟ್ಟಿದ್ದಾಗ ಮಾತ್ರವೇ ಸಂದರ್ಭಾನುಸಾರ ಪ್ರಬಂಧಕರ ಮಂಡಳಿ ಅಥವಾ ವ್ಯವಸ್ಥಾಪನಾ ಮಂಡಳಿ ಅಥವಾ ಯಾವುದೇ ಸಮಿತಿಯವರು ಕಾರ್ಯಸೂಚಿಯಲ್ಲಿ ಸೇರಿಸಬಹುದಾದ ಅಥವಾ ಸಭೆಯಲ್ಲಿ ಚರ್ಚೆಗೆ ತೆಗೆದುಕೊಂಡು ನಿರ್ಣಯವನ್ನು ಕೊಡಬಹುದಾದ ಎಲ್ಲಾ ವಿಷಯಗಳು ಮತ್ತು ಕಲಾಪಗಳು;

(ಸಿ) "ಪ್ರಬಂಧಕರ ಮಂಡಳಿ" ಎಂದರೆ, 23ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಪ್ರಬಂಧಕರ ಮಂಡಳಿ;

(ಡಿ) "ವ್ಯವಸ್ಥಾಪನಾ ಮಂಡಳಿ" ಎಂದರೆ, 24ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಆಡಳಿತ ಮಂಡಳಿ;

(ಇ) "ಕುಲಾಧಿಪತಿ", "ಕುಲಪತಿ", "ಸಹಕುಲಪತಿ" ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ ಮತ್ತು ಸಹಕುಲಪತಿ;

(ಎಫ್) "ಕ್ಯಾಂಪಸ್" ಎಂದರೆ, ಅದು ಎಲ್ಲಾದರೂ ಇರಲಿ ವಿಶ್ವವಿದ್ಯಾಲಯವು ಸ್ಥಾಪಿಸಿದ, ನಿರ್ವಹಿಸುವ ಒಂದು ಕ್ಯಾಂಪಸ್;

(ಜಿ) "ಸಮಿತಿಗಳು" ಎಂದರೆ, ಈ ಅಧಿನಿಯಮದಡಿಯಲ್ಲಿ ರೂಪಿಸಲಾದ ಸಮಿತಿಗಳು ಅಥವಾ ಸಂದರ್ಭಾನುಸಾರವಾಗಿ ವಿಶ್ವವಿದ್ಯಾಲಯದ ವಿವಿಧ ಕಾರ್ಯಕರ್ತರು ರಚಿಸಿರುವ ಸಮಿತಿಗಳು ಮತ್ತು ಅದರಲ್ಲಿ ನಾಮನಿರ್ದೇಶನ ಸಮಿತಿ, ಹಣಕಾಸು ಸಮಿತಿ, ಮತ್ತು ಅಂಥ ಇತರ ಸಮಿತಿಗಳು ಒಳಗೊಳ್ಳುತ್ತವೆ;

(ಎಚ್) "ಘಟಕ ಕಾಲೇಜು" ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುತ್ತಿರುವ ಒಂದು ಕಾಲೇಜು ಅಥವಾ ಸಂಸ್ಥೆ;

(ಐ) "ಹಣಕಾಸು ಸಮಿತಿ" ಎಂದರೆ, 27ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಹಣಕಾಸು ಸಮಿತಿ;

(ಜೆ) "ಸರ್ಕಾರ" ಎಂದರೆ, ಕರ್ನಾಟಕ ಸರ್ಕಾರ;

(ಕೆ) "ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳು" ಎಂದರೆ, ವಿಶ್ವವಿದ್ಯಾಲಯ ಅನುದಾನ ಆಯೋಗ, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು, ಭಾರತೀಯ ವೈದ್ಯಕೀಯ ಪರಿಷತ್ತು, ಭಾರತೀಯ ಔಷಧ ವಿಜ್ಞಾನ ಪರಿಷತ್ತು, ಭಾರತೀಯ ಕೃಷಿ ಸಂಶೋಧನಾ ಪರಿಷತ್ತು, ರಾಷ್ಟ್ರೀಯ ಮೌಲ್ಯಮಾಪನ ಮತ್ತು ಅಧಿಮಾನ್ಯತಾ ಪರಿಷತ್ತು, ರಾಷ್ಟ್ರೀಯ ಬೋಧಕ ಶಿಕ್ಷಣ ಪರಿಷತ್ತು, ದೂರಶಿಕ್ಷಣ ಪರಿಷತ್ತು, ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಪರಿಷತ್ತು ಮುಂತಾದ, ಉನ್ನತ ಶಿಕ್ಷಣದಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುವಂತೆ ನೋಡಿಕೊಳ್ಳುವುದಕ್ಕಾಗಿ ಗುಣಮಟ್ಟಗಳು ಮತ್ತು ಷರತ್ತುಗಳನ್ನು ವಿಧಿಸುವುದಕ್ಕಾಗಿ, ಕೇಂದ್ರ ಸರ್ಕಾರವು ಸ್ಥಾಪಿಸಿರುವ ಒಂದು ಸಂಸ್ಥೆ ಮತ್ತು ಇದರಲ್ಲಿ ಸರ್ಕಾರವೂ ಸೇರಿರುತ್ತದೆ;

(ಎಲ್) "ನಿಯಮಿಸಲಾದುದು" ಎಂದರೆ, ಈ ಅಧಿನಿಯಮದಡಿಯಲ್ಲಿ ಸರ್ಕಾರವು ರಚಿಸಲಾದ ನಿಯಮಗಳ ಮೂಲಕ ನಿಯಮಿಸಲಾದುದು;

(ಎಂ) "ಒಂದು ಘಟಕ ಕಾಲೇಜಿಗೆ ಸಂಬಂಧಪಟ್ಟಂತೆ ಪ್ರಾಂಶುಪಾಲರು" ಎಂದರೆ, ಘಟಕ ಕಾಲೇಜಿನ ಮುಖ್ಯಸ್ಥರು ಮತ್ತು ಪ್ರಾಂಶುಪಾಲರು ಇಲ್ಲದಿದ್ದಲ್ಲಿ ಅಥವಾ ನೇಮಕವಾದ ಪ್ರಾಂಶುಪಾಲರ ಗೈರುಹಾಜರಿಯಲ್ಲಿ, ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ತಾತ್ಕಾಲಿಕವಾಗಿ ನೇಮಕಗೊಂಡಿರುವ ಉಪಪ್ರಾಂಶುಪಾಲರು ಅಥವಾ ಯಾವುದೇ ಇತರ ವ್ಯಕ್ತಿಯೂ ಇದರಲ್ಲಿ ಒಳಗೊಳ್ಳುತ್ತಾರೆ;

(ಎನ್) "ಕುಲಸಚಿವರು" ಎಂದರೆ, ವಿಶ್ವವಿದ್ಯಾಲಯದ ಕುಲಸಚಿವರು;

(ಒ) "ಪ್ರಾದೇಶಿಕ ಕೇಂದ್ರ" ಎಂದರೆ, ಯಾವುದೇ ಪ್ರದೇಶದಲ್ಲಿನ ಅಧ್ಯಯನ ಕೇಂದ್ರಗಳ ಕಾರ್ಯವನ್ನು ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ಮಾಡುವ ಉದ್ದೇಶಕ್ಕಾಗಿ ಮತ್ತು ಅಂಥ ಕೇಂದ್ರಕ್ಕೆ ವ್ಯವಸ್ಥಾಪನಾ ಮಂಡಳಿಯು ವಹಿಸಿಕೊಡಬಹುದಾದ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸುವುದಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಅಥವಾ ನಿರ್ವಹಿಸಿಕೊಂಡುಬರುವ ಒಂದು ಕೇಂದ್ರ;

(ಪಿ) ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ "ಪ್ರಾಯೋಜಕ ಪ್ರಾಧಿಕಾರ" ಅಥವಾ "ಪ್ರಾಯೋಜಕ ಸಂಸ್ಥೆ" ಎಂದರೆ, ನ್ಯಾಸ;

(ಕ್ಯೂ) "ರಾಜ್ಯ" ಎಂದರೆ, ಕರ್ನಾಟಕ ರಾಜ್ಯ;

(ಆರ್) "ಪರಿನಿಯಮಗಳು" ಮತ್ತು "ವಿನಿಯಮಗಳು" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಅನುಕ್ರಮವಾಗಿ ವಿಶ್ವವಿದ್ಯಾಲಯದ ಪರಿನಿಯಮಗಳು ಮತ್ತು ವಿನಿಯಮಗಳು;

(ಎಸ್) "ಅಧ್ಯಯನ ಕೇಂದ್ರ" ಎಂದರೆ, ದೂರ ಶಿಕ್ಷಣದ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಅಗತ್ಯವಾದ ಬುದ್ಧಿವಾದ, ಸಲಹೆಗಳನ್ನು ನೀಡುವ ಅಥವಾ ಇತರ ಯಾವುದೇ ನೆರವನ್ನು ನೀಡುವ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಮತ್ತು ನಿರ್ವಹಿಸಿಕೊಂಡುಬಂದ ಒಂದು ಕೇಂದ್ರ;

(ಟಿ) "ಅಧ್ಯಾಪಕರು" ಎಂದರೆ, ಒಬ್ಬ ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಒಂದು ಘಟಕ ಕಾಲೇಜಿನಲ್ಲಿ ಬೋಧಿಸುವುದಕ್ಕೆ ಅಥವಾ ಸಂಶೋಧನೆ ನಡೆಸುವುದಕ್ಕೆ ಅಥವಾ ಸಂಶೋಧನೆಗೆ ಮಾರ್ಗದರ್ಶನ ನೀಡುವುದಕ್ಕೆ ನೇಮಕವಾದ ಅಂಥ ಇತರ ವ್ಯಕ್ತಿ

ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗವು ನಿಯಮಿಸಿದ ಗುಣಮಟ್ಟಗಳಿಗೆ ಅನುಸಾರವಾಗಿ ಇರುವ ಘಟಕ ಕಾಲೇಜಿನ ಪ್ರಾಂಶುಪಾಲರು ಇದರಲ್ಲಿ ಒಳಗೊಳ್ಳುತ್ತಾರೆ;

(ಯು) **"ನ್ಯಾಸ"** ಎಂದರೆ ಅರ್ಕ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ನ್ಯಾಸ, ಬೆಂಗಳೂರು;

(ವಿ) "ವಿಶ್ವವಿದ್ಯಾಲಯ ಅನುದಾನಗಳ ಆಯೋಗ" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) 4ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ಆಯೋಗ;

(ಡಬ್ಲ್ಯೂ)"ವಿಶ್ವವಿದ್ಯಾಲಯ" ಎಂದರೆ, ಈ ಅಧಿನಿಯಮದಡಿಯಲ್ಲಿ ಸ್ಥಾಪಿಸಿ ನಿಗಮಿತಗೊಳಿಸಲಾದ ಅರ್ಕ ವಿಶ್ವವಿದ್ಯಾಲಯ;

(ಎಕ್ಸ್) "ಸಂದರ್ಶಕರು" ಎಂದರೆ, 13ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ವಿಶ್ವವಿದ್ಯಾಲಯದ ಸಂದರ್ಶಕರು.

## ಅಧ್ಯಾಯ- II

## ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

3. **ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ.**- (1) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಹಕ್ಕನ್ನು ನ್ಯಾಸವು ಹೊಂದಿರತಕ್ಕದ್ದು.

(2) ನ್ಯಾಸವು ರಾಜ್ಯ ಸರ್ಕಾರಕ್ಕೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವವನ್ನು ಸಲ್ಲಿಸತಕ್ಕದ್ದು.

(3) ನ್ಯಾಸವು ಈ ಮುಂದಿನ ವಿವರಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ನ್ಯಾಸದ ವಿವರಗಳೊಂದಿಗೆ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು;

(ii) ವಿಶ್ವವಿದ್ಯಾಲಯದ ವ್ಯಾಪ್ತಿ ಮತ್ತು ಸ್ಥಾನಮಾನ ಹಾಗೂ ಭೂಮಿಯ ಲಭ್ಯತೆ;

(iii) ಪ್ರಾರಂಭದ ದಿನಾಂಕದಿಂದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳಬೇಕೆಂದಿರುವ ಅಧ್ಯಯನ ಮತ್ತು ಸಂಶೋಧನಾ ಕಾರ್ಯಕ್ರಮಗಳ ಸ್ವರೂಪ ಮತ್ತು ಬಗೆಗಳು;

(iv) ಪ್ರಾರಂಭಿಸಬೇಕೆಂದು ಪ್ರಸ್ತಾಪಿಸಿರುವ ವ್ಯಾಸಂಗ ವಿಭಾಗಗಳು (ಫ್ಯಾಕಲ್ಟಿಗಳು), ಅಧ್ಯಯನ ಕ್ರಮಗಳು ಮತ್ತು ಸಂಶೋಧನೆಗಳ ಸ್ವರೂಪ;

(v) ಕಟ್ಟಡಗಳು, ಸಲಕರಣೆಗಳು ಮತ್ತು ರಚನಾ ಸೌಕರ್ಯಗಳನ್ನು ಒದಗಿಸುವಂಥ ಕ್ಯಾಂಪಸ್ ಅಭಿವೃದ್ಧಿ;

(vi) ಪ್ರಾರಂಭದ ದಿನಾಂಕದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಗಾಗಿ ಬಂಡವಾಳ ವೆಚ್ಚದ ಹಂತಗಳು;

(vii) ಬಾಬುವಾರು ಆವರ್ತಕ ವೆಚ್ಚ, ಆರ್ಥಿಕ ಮೂಲಗಳು ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ತಗಲುವ ಅಂದಾಜು ವೆಚ್ಚ;

(viii) ಸಂಪನ್ಮೂಲ ಸಂಗ್ರಹಣೆಗಾಗಿ ಯೋಜನೆ ಮತ್ತು ಅದಕ್ಕೆ ಬಂಡವಾಳದಿಂದ ತಗಲುವ ವೆಚ್ಚ ಹಾಗೂ ಪ್ರತಿಯೊಂದು ಮೂಲಕ್ಕೂ ಮರು ಸಂದಾಯ ಮಾಡುವ ರೀತಿ;

(ix) ವಿದ್ಯಾರ್ಥಿಗಳಿಂದ ಶುಲ್ಕ ವಸೂಲು ಮಾಡಿ ಆಂತರಿಕವಾಗಿ ನಿಧಿ ಸಂಗ್ರಹಿಸುವ ಯೋಜನೆ, ಸಲಹಾ ಸೇವೆ ಮತ್ತು ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಿಗೆ ಸಂಬಂಧಿಸಿದ ಇತರ ಚಟುವಟಿಕೆಗಳಿಂದ ನಿರೀಕ್ಷಿತ ವರಮಾನಗಳು ಮತ್ತು ಇತರ ನಿರೀಕ್ಷಿತ ವರಮಾನಗಳು;

(x) ಘಟಕವೊಂದಕ್ಕೆ ತಗಲುವ ವೆಚ್ಚದ ವಿವರಗಳು, ಆರ್ಥಿಕವಾಗಿ ದುರ್ಬಲವಾದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕ, ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿ ವೇತನದಲ್ಲಿ ನೀಡುವ ರಿಯಾಯಿತಿ ಅಥವಾ ವಿನಾಯತಿಯ ಪರಿಮಿತಿಯ ವಿವರಗಳನ್ನು ಮತ್ತು ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳಿಗೆ ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳು ಪ್ರಾಯೋಜಿಸಿದ ವಿದ್ಯಾರ್ಥಿಗಳಿಗೆ ಮತ್ತು ಭಾರತವನ್ನುಳಿದು ಇತರ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ವಿಧಿಸತಕ್ಕ ಶುಲ್ಕದ ದರಗಳು ಬೇರೆ ಬೇರೆ ಇದ್ದಲ್ಲಿ ಅವುಗಳನ್ನು ಸೂಚಿಸುವ ಶುಲ್ಕ ರಚನೆಯ ವಿವರಗಳು;

(xi) ಸಂಬಂಧಪಟ್ಟ ವಿದ್ಯಾ ವಿಭಾಗದಲ್ಲಿ ಎಷ್ಟು ವರ್ಷಗಳ ಅನುಭವ ಮತ್ತು ಪರಿಣಿತಿಯನ್ನು ನ್ಯಾಸವು ದೊರಕಿಸಿಕೊಡಲಿದೆ ಹಾಗೂ ಅದರ ಹಣಕಾಸಿನ ಸಂಪನ್ಮೂಲಗಳು;

(xii) ವಿಶ್ವವಿದ್ಯಾಲಯದಲ್ಲಿರುವ ಅಧ್ಯಯನ ಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕಾಗಿ ಇರುವ ವ್ಯವಸ್ಥೆ;

(xiii) ವಿಶ್ವವಿದ್ಯಾಲಯವು ಸ್ಥಾಪನೆಯಾಗುವುದಕ್ಕೆ ಮೊದಲು ನೆರವೇರಿಸಬೇಕೆಂದು ರಾಜ್ಯ ಸರ್ಕಾರವು ಅಗತ್ಯಪಡಿಸಬಹುದಾದ ಅಂಥ ಇತರ ಷರತ್ತುಗಳ ನೆರವೇರಿಕೆಯ ಹಂತ.

(4) ಸ್ವೀಕರಿಸಿದ ಪ್ರಸ್ತಾವಗಳನ್ನು ಪರೀಕ್ಷಿಸಲು ರಾಜ್ಯ ಸರ್ಕಾರವು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಪದನಿಮಿತ್ತ ಸದಸ್ಯರಾದ ಮೂರು ಸದಸ್ಯರುಗಳನ್ನು ಒಳಗೊಂಡ ಒಂದು ಪರಿಶೋಧನಾ ಸಮಿತಿಯನ್ನು ರಚಿಸತಕ್ಕದ್ದು ಮತ್ತು ಅದು ರಾಜ್ಯ ಸರ್ಕಾರಕ್ಕೆ ಶಿಫಾರಸ್ಸನ್ನು ಮಾಡತಕ್ಕದ್ದು.

**4. ವಿಶ್ವವಿದ್ಯಾಲಯದ ಸ್ಥಾಪನೆ.**– (l) ರಾಜ್ಯ ಸರ್ಕಾರವು ಪರಿಶೋಧನಾ ಸಮಿತಿಯು ಮಾಡಿದ ಶಿಫಾರಸ್ಸುಗಳನ್ನು ಪರಿಶೀಲಿಸಿದ ತರುವಾಯ ಮತ್ತು ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ,–

(i) ನ್ಯಾಸವು ಸಾಕಷ್ಟು ಮೂಲ ಸೌಕರ್ಯದೊಂದಿಗೆ ವಿಶ್ವವಿದ್ಯಾಲಯವೊಂದನ್ನು ನಡೆಸಲು ಸಮರ್ಥವಾಗಿದೆ ಎಂದು ಅದು ಮನಗಂಡರೆ;

(ii) ಪ್ರದೇಶಕ್ಕನುಸಾರವಾಗಿ ಕೆಳಗೆ ನಿರ್ದಿಷ್ಟ ಪಡಿಸಿದ ವ್ಯಾಪ್ತಿಗೆ ಭೂಮಿಯ ಒಡೆತನವನ್ನು ಹೊಂದಿರತಕ್ಕದ್ದು, ಎಂದರೆ:–

(ಎ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯೊಳಗಿದ್ದರೆ ಇಪ್ಪತ್ತೈದು ಎಕರೆಗಳು;

(ಬಿ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮಿತಿಯಿಂದ ಹೊರಗೆ ಇದ್ದು ಆದರೆ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಪ್ರದೇಶದ ಒಳಗೆ ಇದ್ದರೆ ನಲವತ್ತು ಎಕರೆಗಳು;

(ಸಿ) ಭೂಮಿಯು (ಎ) ಮತ್ತು (ಬಿ) ಖಂಡಗಳಲ್ಲಿ ನಿರ್ದಿಷ್ಟಪಡಿಸಿದ ಸ್ಥಳಗಳನ್ನು ಹೊರತುಪಡಿಸಿದ್ದರೆ ಅರವತ್ತು ಎಕರೆಗಳಿಗಿಂತ ಕಡಿಮೆ ಇರತಕ್ಕದ್ದಲ್ಲ.

ಮೇಲೆ ನಿರ್ದಿಷ್ಟಪಡಿಸಿದ ಭೂಮಿಯು ಏಕ ಘಟಕ(ಸಿಂಗಲ್ ಬ್ಲಾಕ್) ದಲ್ಲಿರತಕ್ಕದ್ದು ಮತ್ತು ಇದು ಸಂಬಂಧಪಟ್ಟ ನ್ಯಾಸ /ಪ್ರತಿಷ್ಠಾನ/ ಸಂಸ್ಥೆ/ ವಿಶ್ವವಿದ್ಯಾಲಯದ ಹೆಸರಿನಲ್ಲಿರತಕ್ಕದ್ದು. 3ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ಅಗತ್ಯಪಡಿಸಲಾದಂತೆ ನ್ಯಾಸವು ಒದಗಿಸಿದ ವಿವರಗಳ ಆಧಾರದ ಮೇಲೆ ಸರ್ಕಾರವು 47ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಬೇಕೆಂದು ನ್ಯಾಸಕ್ಕೆ ನಿರ್ದೇಶನ ನೀಡಬಹುದು.

(2) ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಸ್ಥಾಪನೆಯ ತರುವಾಯ, ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, "ಅರ್ಕ ವಿಶ್ವವಿದ್ಯಾಲಯ" ಎಂಬ ಹೆಸರಿನ ಏಕಾತ್ಮಕ ಸ್ವರೂಪದ ಒಂದು ವಿಶ್ವವಿದ್ಯಾಲಯವನ್ನು ರಾಜ್ಯದಲ್ಲಿ ಸ್ಥಾಪಿಸುವುದಕ್ಕೆ ಮಂಜೂರಾತಿಯನ್ನು ನೀಡಬಹುದು.

(3) ವಿಶ್ವವಿದ್ಯಾಲಯದ ಕೇಂದ್ರಕಾರ್ಯಸ್ಥಾನವು ಬೆಂಗಳೂರಿನಲ್ಲಿ ಇರತಕ್ಕದ್ದು. ವಿಶ್ವವಿದ್ಯಾಲಯವು ತನ್ನ ಕ್ಯಾಂಪಸ್ಸುಗಳನ್ನು ಅಥವಾ ಪ್ರಾದೇಶಿಕ ಕೇಂದ್ರಗಳನ್ನು, ಅಧ್ಯಯನ ಕೇಂದ್ರಗಳನ್ನು ಕರ್ನಾಟಕದ ಯಾವುದೇ ಭಾಗದಲ್ಲಿ ಹೊಂದಿರತಕ್ಕದ್ದು ಮತ್ತು ಆ ಬಗ್ಗೆ ರಾಜ್ಯ ಸರ್ಕಾರದ ಪೂರ್ವಾನುಮತಿಯನ್ನು ಪಡೆದುಕೊಳ್ಳುವುದಕ್ಕೊಳಪಟ್ಟು ಹಾಗೂ ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗನುಸಾರವಾಗಿ ಹೊಂದಿರತಕ್ಕದ್ದು.

(4) ಮೊದಲ ಕುಲಾಧಿಪತಿಯವರು, ಮೊದಲ ಕುಲಪತಿಯವರು, ಪ್ರಬಂಧಕ ಮಂಡಳಿಯ ಮೊದಲ ಸದಸ್ಯರುಗಳು, ವ್ಯವಸ್ಥಾಪನಾ ಮಂಡಳಿಯ ಹಾಗೂ ಶೈಕ್ಷಣಿಕ ಪರಿಷತ್ತಿನ ಮೊದಲ ಸದಸ್ಯರುಗಳು ಮತ್ತು ಇನ್ನು ಮುಂದೆ, ಅಂಥ ಅಧಿಕಾರಿಗಳು ಅಥವಾ ಸದಸ್ಯರುಗಳಾಗಬಹುದಾದಂಥ ಎಲ್ಲಾ ವ್ಯಕ್ತಿಗಳು, ಅಂಥ ಪದ ಅಥವಾ ಸದಸ್ಯತ್ವವನ್ನು ಹೊಂದಿರುವುದು ಮುಂದುವರೆಯುವವರೆಗೆ, ಒಂದು ನಿಗಮಿತ ನಿಕಾಯವನ್ನು ರಚಿಸತಕ್ಕದ್ದು. ಮತ್ತು ಅದು ವಿಶ್ವವಿದ್ಯಾಲಯದ ಹೆಸರಿನಲ್ಲಿ ದಾವೆ ಹೂಡಬಹುದು ಮತ್ತು ದಾವೆಗೊಳಗಾಗಬಹುದು.

(5) (2)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯವು ಸ್ಥಾಪನೆಗೆ ಮಂಜೂರಾತಿಯಾದ ಮೇಲೆ, ವಿಶ್ವವಿದ್ಯಾಲಯದ ಉದ್ದೇಶಕ್ಕಾಗಿ, ನ್ಯಾಸವು ಆರ್ಜಿಸಿದ, ಸೃಜಿಸಿದ, ಏರ್ಪಾಟು ಮಾಡಿಕೊಂಡ ಅಥವಾ ಕಟ್ಟಲ್ಪಟ್ಟ ಭೂಮಿ ಮತ್ತು ಇತರ ಸ್ಥಿರ ಮತ್ತು ಚರ ಸ್ವತ್ತು, ವಿಶ್ವವಿದ್ಯಾಲಯದಲ್ಲಿ ನಿಹಿತವಾಗಿರತಕ್ಕದ್ದು.

(6) ವಿಶ್ವವಿದ್ಯಾಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದ ಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂಥ

ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

(7) ವಿಶ್ವವಿದ್ಯಾಲಯದಲ್ಲಿನ ಭೂಮಿ, ಕಟ್ಟಡ ಮತ್ತು ಇತರ ಸ್ವತ್ತುಗಳನ್ನು ವಿಶ್ವವಿದ್ಯಾಲಯದ ಉದ್ದೇಶಗಳಿಗೆ ಆನುಷಂಗಿಕವಾಗಿರುವುದನ್ನು ಹೊರತುಪಡಿಸಿ ಇತರ ಯಾವುದೇ ಉದ್ದೇಶಕ್ಕಾಗಿ ಬಳಸತಕ್ಕದ್ದಲ್ಲ.

**5. ಅನುದಾನಗಳು ಮತ್ತು ಹಣಕಾಸು ನೆರವು.–** ವಿಶ್ವವಿದ್ಯಾಲಯವು ಸ್ವಂತ ಧನಮೂಲ ಉಳ್ಳದ್ದಾಗಿರತಕ್ಕದ್ದು ಮತ್ತು ರಾಜ್ಯದಿಂದ ಅಥವಾ ರಾಜ್ಯದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಇತರ ಸಂಸ್ಥೆ ಅಥವಾ ನಿಗಮದಿಂದ ಯಾವುದೇ ನಿರ್ವಹಣಾ ಸಹಾಯ ಅನುದಾನ ಅಥವಾ ಯಾವುದೇ ಹಣಕಾಸು ನೆರವನ್ನು ಹಕ್ಕಿನಿಂದ ಕೇಳತಕ್ಕದ್ದಲ್ಲ ಅಥವಾ ಅದನ್ನು ಪಡೆಯಲು ಹಕ್ಕನ್ನು ಹೊಂದಿರತಕ್ಕದ್ದಲ್ಲ:

ಪರಂತು, ರಾಜ್ಯವು,–

(ಎ) ಇತರ ರಾಜ್ಯ ಸರ್ಕಾರದ ಸಂಘಟನೆಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿರುವಂಥದ್ದೇ ಸಂಶೋಧನೆ, ಅಭಿವೃದ್ಧಿ ಮತ್ತಿತರ ಚಟುವಟಿಕೆಗಳಿಗಾಗಿ; ಅಥವಾ

(ಬಿ) ಸರ್ಕಾರದಿಂದ ನೆರವನ್ನು ಪಡೆಯುವ ಯಾವುದೇ ನಿರ್ದಿಷ್ಟ ಸಂಶೋಧನೆ ಅಥವಾ ಕಾರ್ಯಕ್ರಮಗಳಿಗಾಗಿ; ಮತ್ತು

(ಸಿ) ರಾಜ್ಯ ಕಾರ್ಯನೀತಿಯ ಬದಲಾವಣೆಗೆ ಒಳಪಟ್ಟು ಅಥವಾ ಅನ್ಯಥಾ ಇದೇ ಬಗೆಯ ವಿಶ್ವವಿದ್ಯಾಲಯಗಳಿಗೆ ಅವಕಾಶವನ್ನು ಕಲ್ಪಿಸುವುದಕ್ಕೆ ಅಥವಾ ಅವುಗಳ ಪ್ರಯೋಜನಕ್ಕಾಗಿ,

–ಅನುದಾನದ ಮೂಲಕ ಅಥವಾ ಅನ್ಯಥಾ ಹಣಕಾಸು ಬೆಂಬಲವನ್ನು ಒದಗಿಸಬಹುದು:

ಮತ್ತು ಪರಂತು, ವಿಶ್ವವಿದ್ಯಾಲಯವು, ಯಾವುದೇ ಇತರ ಮೂಲದಿಂದ ಯಾವುದೇ ಆರ್ಥಿಕ ನೆರವನ್ನು ಸ್ವೀಕರಿಸಬಹುದು.

**6. ಘಟಕ ಕಾಲೇಜು, ಪ್ರಾದೇಶಿಕ ಕೇಂದ್ರಗಳು ಅಥವಾ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದಕ್ಕೆ ಅಧಿಕಾರ.–** ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಐದು ವರ್ಷಗಳನ್ನು ಪೂರ್ಣಗೊಳಿಸಿದ ನಂತರ, ವಿಶ್ವವಿದ್ಯಾಲಯ ಅನುದಾನ ಆಯೋಗದ ಮತ್ತು ಇತರ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ಗುಣಮಟ್ಟಗಳಿಗೆ ಒಳಪಟ್ಟು, ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ವಿಶ್ವವಿದ್ಯಾಲಯವು, ರಾಜ್ಯದಲ್ಲಿ ತನಗೆ ಸೂಕ್ತವೆನಿಸುವಂಥ ಸ್ಥಳಗಳಲ್ಲಿ ಘಟಕ ಕಾಲೇಜುಗಳು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದಿರಬಹುದು.

**7. ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು.–** ವಿಶ್ವವಿದ್ಯಾಲಯವು, ತನ್ನ ಭವಿಷ್ಯದ್‌ದೃಷ್ಟಿ ಮತ್ತು ಧ್ಯೇಯೋದ್ದೇಶಗಳನ್ನು ಸಾಧಿಸಲು ಈ ಮುಂದಿನಂತೆ ವಿವಿಧ ಬಗೆಯ ಕಾರ್ಯತಂತ್ರಗಳನ್ನು ಕೈಗೊಳ್ಳಬಹುದು:–

(i) ಪ್ರಜ್ಞಾವಂತ ಸಮಾಜದ ಸೃಜನೆಗಾಗಿ ಸಾಮಾಜಿಕವಾದ ಸುಸಂಬದ್ಧ ಅವಶ್ಯಕತೆಗಳನ್ನು ಗಮನದಲ್ಲಿಟ್ಟುಕೊಂಡು ಸಂಶೋಧನೆ ಮತ್ತು ಬೋಧನೆಗಾಗಿ ಸುಭದ್ರ ನೆಲೆಗಟ್ಟನ್ನು ರೂಪಿಸುವುದು;

(ii) ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ನ್ಯಾಸಧಾರಿಗಳು ಯುಕ್ತವೆಂದು ಭಾವಿಸಬಹುದಾದಂಥ ಕಲೆ, ವಿಜ್ಞಾನ, ವಾಣಿಜ್ಯ, ಕಾನೂನು, ಇಂಜಿನಿಯರಿಂಗ್, ನಗರ ಯೋಜನೆ, ವ್ಯವಸ್ಥಾಪನೆ, ಆತಿಥ್ಯ, ಸಂಗೀತ, ಭಾಷಾ ವಿಜ್ಞಾನ ಮತ್ತು ಅಂಥ ಇತರ ವಿಷಯಗಳಲ್ಲಿ ಪದವಿ, ಸ್ನಾತಕೋತ್ತರ, ಡಾಕ್ಟೊರೇಟ್ ಪದವಿಯ (doctoral) ಮತ್ತು ಡಾಕ್ಟೊರೇಟ್ ಪದವಿ ನಂತರದ ವ್ಯಾಸಂಗ ವಿಷಯಗಳ ಕೋರ್ಸುಗಳವರೆಗೆ ಮತ್ತು ಅವುಗಳನ್ನು ಒಳಗೊಂಡಂತೆ ವಿಶ್ವವಿದ್ಯಾಲಯದ ಶಿಕ್ಷಣದ ಸುಧಾರಣೆಯನ್ನು ಬೆಂಬಲಿಸುವುದು, ಉತ್ತೇಜಿಸುವುದು ಮತ್ತು ಕೈಗೆತ್ತಿಕೊಳ್ಳುವುದು;

(iii) ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ವಿಶ್ವವಿದ್ಯಾಲಯದ ಗುಣಮಟ್ಟಗಳಿಗನುಸಾರವಾಗಿ ಶೈಕ್ಷಣಿಕ ಬದಲಾವಣೆ ಮತ್ತು ಸಾಮಾಜಿಕ ಹಾಗೂ ಮಾನವಾಭಿವೃದ್ಧಿ ಬಗ್ಗೆ ಅರಿವನ್ನುಂಟು ಮಾಡಲು ಮತ್ತು ಆ ಬಗ್ಗೆ ಕೊಡುಗೆ ನೀಡಲು ಕರ್ನಾಟಕದಲ್ಲಿನ ವಿವಿಧ ಸ್ಥಳಗಳಲ್ಲಿ ಕ್ಯಾಂಪಸ್ಸುಗಳನ್ನು ಸ್ಥಾಪಿಸುವುದು ಮತ್ತು ಅಧ್ಯಯನ ಕೇಂದ್ರಗಳು, ಸಂಯೋಜಿತ ಕಾಲೇಜುಗಳು ಮತ್ತು ಪ್ರಾದೇಶಿಕ ಕೇಂದ್ರಗಳನ್ನು ಹೊಂದುವುದು;

(iv) ಪರಿಸರ ಸ್ನೇಹಿ ನಿರ್ಮಾಣ, ಇಂಧನ ಸಂರಕ್ಷಣೆ, ಪರಂಪರಾ ಸಂರಕ್ಷಣೆ, ದೇಶೀಯ ಉತ್ಪಾದನಾ ಸಂಪ್ರದಾಯಗಳ ಕಡೆಗೆ ಒಯ್ಯುವಂತೆ ಸಂಶೋಧನೆ ಮತ್ತು ಬೋಧನೆ, ವಾಸ್ತು ಶಿಲ್ಪ ಮತ್ತು ನಗರ

ಯೋಜನೆ, ಪರಂಪರೆಯ ಸಂರಕ್ಷಣೆ, ಭೂದೃಶ್ಯ ವಿನ್ಯಾಸ, ಕರಕುಶಲಕಲೆಗಳು ಮತ್ತು ಗ್ರಾಫೀಕ್ ವಿನ್ಯಾಸಗಳಿಗೆ ಸಮಗ್ರ ಚೌಕಟ್ಟನ್ನು ಹೊಂದಿರುವುದು;

(v) ಏರೋಸ್ಪೇಸ್ ಇಂಜಿನಿಯರಿಂಗ್ ಮತ್ತು ನಿರ್ವಹಣೆಯ ವಿಶೇಷ ಕ್ಷೇತ್ರಗಳಲ್ಲಿ ಶಿಕ್ಷಣ ಮತ್ತು ತರಬೇತಿ ನೀಡುವುದು, ಜ್ಞಾನದಲ್ಲಿ ಅಭಿವೃದ್ಧಿ ಮತ್ತು ಪ್ರಸಾರಕ್ಕೆ ಸಂಬಂಧಿಸಿದಂತೆ ಸಂಶೋಧನೆಯ ಅವಕಾಶವನ್ನು ಕಲ್ಪಿಸುವುದು, ಅಂತರಾಷ್ಟ್ರೀಯ ವ್ಯವಹಾರಗಳೊಂದಿಗೆ, ನಿರ್ದಿಷ್ಟವಾಗಿ ಗ್ರಾಮೀಣಾಭಿವೃದ್ಧಿಯನ್ನು ಗಮನದಲ್ಲಿಟ್ಟುಕೊಂಡು ರಾಷ್ಟ್ರೀಯ ಅಭಿವೃದ್ಧಿಯ ಮೇಲೆ ಏರೋಸ್ಪೇಸ್ ತಾಂತ್ರಿಕತೆಗಳ ಪ್ರಭಾವದ ಮೇಲೆ ಅಧ್ಯಯನವನ್ನು ಕೈಗೊಳ್ಳುವುದು, ಏರೋಸ್ಪೇಸ್ ಇಂಜಿನಿಯರಿಂಗ್ ಮತ್ತು ನಿರ್ವಹಣೆಯಲ್ಲಿ ಅದ್ವಿತೀಯ ಕೇಂದ್ರವನ್ನು ಸೃಜಿಸುವ ಉದ್ದೇಶಗಳನ್ನು ಸಾಧಿಸಲು ಅವಶ್ಯಕವಾಗಬಹುದಾದಂಥ ಅಥವಾ ಅಪೇಕ್ಷಣೀಯವಾಗಬಹುದಾದಂಥ ಇತರೆ ಕಾರ್ಯಗಳು ಮತ್ತು ಕೆಲಸಗಳನ್ನು ಮಾಡುವುದು;

(vi) ಸಾರ್ವಜನಿಕ ಆಡಳಿತಗಳ ವಿವಿಧ ಆಯಾಮಗಳನ್ನು ವಿಶ್ಲೇಷಿಸಲು ಮತ್ತು ನಿರ್ಧರಿಸಲು ಸಂಪನ್ಮೂಲ ಕೇಂದ್ರ ಮತ್ತು ಸಂಶೋಧನಾ ತಂಡದ ಅಭಿವೃದ್ಧಿಗೆ ಮಾನವಿಕಗಳು, ಸಮಾಜ ವಿಜ್ಞಾನ ಮತ್ತು ಕಲೆಗಳ ಮೇಲೆ ಹೆಚ್ಚಿನ ಗಮನ ನೀಡುವುದು;

(vii) ವಾಣಿಜ್ಯೋದ್ಯಮ ಮತ್ತು ವಾಣಿಜ್ಯೋದ್ಯಮಿಗೆ ಸಂಬಂಧಿಸಿದ ಕ್ಷೇತ್ರಗಳಲ್ಲಿ ಸಂಶೋಧನೆ ನಡೆಸಲು ಸುಭದ್ರ ನೆಲೆಗಟ್ಟನ್ನು ರೂಪಿಸುವುದು ಮತ್ತು ಈಗಷ್ಟೆ ರೂಪುತಳೆಯುತ್ತಿರುವ ಕಂಪನಿಗಳಿಗೆ ಕಾರ್ಯತಂತ್ರದ ಸಲಹೆಗಳನ್ನು ಒದಗಿಸುವುದೂ ಒಳಗೊಂಡಂತೆ ಪ್ರಕರಣದ ಅಧ್ಯಯನಗಳನ್ನು ಅಭಿವೃದ್ಧಿಪಡಿಸುವುದು.

(viii) ಕರ್ನಾಟಕದ ಪ್ರಾಚೀನ ಇತಿಹಾಸ ಮತ್ತು ಶ್ರೀಮಂತ ಸಂಸ್ಕೃತಿಯ ಅಧ್ಯಯನಕ್ಕೆ ವಿಶೇಷ ಪ್ರಾಶಸ್ತ್ಯ ನೀಡಿ, ಪ್ರಾಚೀನ ಭಾರತದ ಸಾಹಿತ್ಯ, ಸಂಕಲನ ಮತ್ತು ಪ್ರಕಟಗೊಳ್ಳದ ಹಸ್ತ ಪ್ರತಿಗಳನ್ನು ಭಾಷಾಂತರಿಸುವುದು, ಮನ:ಶಾಸ್ತ್ರ ಕ್ಷೇತ್ರದಲ್ಲಿ ಪ್ರಾಚೀನ ಭಾರತೀಯರ ಕೊಡುಗೆಗಳ ವಿಶಿಷ್ಟವಾದ ಲಕ್ಷಣಗಳನ್ನು ಗುರುತಿಸುವುದು ಇವುಗಳಲ್ಲಿ ಬಳಸಿಕೊಂಡ ತಾಂತ್ರಿಕ ವೈಜ್ಞಾನಿಕ ಪರಿಭಾಷೆಗಳಾಗಿರುವಂಥ ಭಾರತೀಯ ಸ್ಥಾವರಗಳ ಆಧಾರದ ಮೇಲೆ ಪ್ರಾಚೀನ ಹಸ್ತಪ್ರತಿಗಳ ಅಧ್ಯಯನ, ಸಂಗ್ರಹಣೆ ಮತ್ತು ಮಾಹಿತಿಯನ್ನು ಸಿದ್ಧಪಡಿಸುವುದರ ಮೇಲೆ ಗಮನ ನೀಡಿ ಪ್ರಾಚೀನ ಇತಿಹಾಸ ಮತ್ತು ಸಂಸ್ಕೃತಿಯ ಅಧ್ಯಯನಕ್ಕೆ ಸಮರ್ಪಿತವಾದಂಥ ಸಂಶೋಧನಾ ಕೇಂದ್ರವನ್ನು ಸೃಜಿಸುವುದು.

(ix) ಮೌಲ್ಯಮಾಪನದ ವಿವಿಧ ಆಧುನಿಕ ವಿಧಾನಗಳ ಮೂಲಕ ಮಾಡಿದ ಮೌಲ್ಯಮಾಪನಕ್ಕೆ ಅನುಸಾರವಾಗಿ ಶಿಕ್ಷಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದುದರ ಆಧಾರದ ಮೇಲೆ ನೀಡಲು ಪದವಿಗಳನ್ನು, ಡಿಪ್ಲೋಮೋಗಳನ್ನು, ಪ್ರಮಾಣಪತ್ರಗಳನ್ನು ಮತ್ತು ಯಶೋಪತ್ರ ಪ್ರದಾನದಂಥ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(x) ನಗರ ವಿನ್ಯಾಸ ಯೋಜನೆಯನ್ನು ರೂಪಿಸುವುದಕ್ಕಾಗಿ, ಅಭಿವೃದ್ಧಿಪಡಿಸುವುದಕ್ಕಾಗಿ ವಿದ್ಯಾರ್ಥಿಗಳಿಗೆ, ಬೋಧಕ ವೃಂದದ (ಫ್ಯಾಕಲ್ಟಿ) ಸದಸ್ಯರಿಗೆ ಮತ್ತು ಇತರರಿಗೆ ನಿರ್ದಿಷ್ಟ ಶೈಕ್ಷಣಿಕ ಮತ್ತು ಸಂಶೋಧನಾ ಕಾರ್ಯಕ್ರಮಗಳನ್ನು, ತರಬೇತಿ ಕಾರ್ಯಕ್ರಮಗಳನ್ನು ಮತ್ತು ವಿನಿಮಯ ಕಾರ್ಯಕ್ರಮಗಳನ್ನು ಏರ್ಪಡಿಸುವುದಕ್ಕಾಗಿ ಇತರ ಯಾವುದೇ ವಿಶ್ವವಿದ್ಯಾಲಯಗಳು, ಸಂಶೋಧನಾ ಸಂಸ್ಥೆಗಳು, ಲಾಭರಹಿತ ಸಂಸ್ಥೆಗಳು, ಕೈಗಾರಿಕಾ ಸಂಸ್ಥೆಗಳು, ವೃತ್ತಿಪರ ಸಂಸ್ಥೆಗಳು ಅಥವಾ ಇತರ ಸಂಸ್ಥೆಗಳೊಂದಿಗೆ ಸಹಯೋಗವನ್ನು ಹೊಂದುವುದು;

(xi) ರಾಜ್ಯ ಸರ್ಕಾರದ ಪೂರ್ವಾನುಮತಿಯೊಡನೆ, ವಿಶ್ವಾದ್ಯಂತ ಇರುವ ಉತ್ತಮ ಗುಣಮಟ್ಟದ ಇತರ ಯಾವುವೇ ವಿಶ್ವವಿದ್ಯಾಲಯಗಳೊಂದಿಗೆ ಸಹಭಾಗಿಗಳಾಗಿ ವಿಶ್ವವಿದ್ಯಾಲಯದ ಬೋಧಕ ವೃಂದ (ಫ್ಯಾಕಲ್ಟಿ) ಮತ್ತು ಸಂಶೋಧಕರ ಅಭಿವೃದ್ಧಿ ಮತ್ತು ತರಬೇತಿಗಾಗಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು;

(xii) ರಾಜ್ಯ ಸರ್ಕಾರದ ಪೂರ್ವ ಅನುಮೋದನೆಯೊಡನೆ, ಯಾವುದೇ ಸಂಸ್ಥೆಯೊಂದಿಗೆ ಜೊತೆಗೂಡಿ ಸಂಶೋಧನೆಯನ್ನು ನಡೆಸುವುದು ಮತ್ತು ಸಮರ್ಥನೆಗೊಳಿಸುವುದು;

(xiii) ತಾನು ಸೂಕ್ತವೆಂದು ಭಾವಿಸಬಹುದಾದಂತೆ, ಕಲಿಕೆಯ ಅಂಥ ಶಾಖೆಗಳಲ್ಲಿ ಬೋಧನಾ ಮತ್ತು ಸಂಶೋಧನಾ ಸೌಲಭ್ಯಗಳನ್ನು ಒದಗಿಸಿ ಜ್ಞಾನ ಪ್ರಸಾರ ಮಾಡುವುದು ಮತ್ತು ಅದನ್ನು ಮುಂದುವರೆಸುವುದು ಹಾಗೂ ವಿಶೇಷವಾಗಿ ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯಕ್ರಮದಲ್ಲಿ ಮಾನವಿಕ ಮತ್ತು ವಿಜ್ಞಾನ ವಿಷಯಗಳಲ್ಲಿ ಸಮಗ್ರ ವ್ಯಾಸಂಗ ವಿಷಯಗಳಿಗಾಗಿ ವಿಶೇಷ ಉಪಬಂಧ ಕಲ್ಪಿಸುವುದು ಮತ್ತು ವಿಶ್ವವಿದ್ಯಾಲಯದಲ್ಲಿ ಅಂತರವಿದ್ಯಾವಿಷಯಗಳ ಅಧ್ಯಯನ ಮತ್ತು ಸಂಶೋಧನೆಗೆ ಉತ್ತೇಜನ ನೀಡುವುದಕ್ಕಾಗಿ ಸೂಕ್ತ ಕ್ರಮ ಕೈಗೊಳ್ಳುವುದು;

(xiv) ಉನ್ನತ ಕಲಿಕೆಗೆ ಪ್ರವೇಶಾವಕಾಶಗಳನ್ನು ಮತ್ತು ನ್ಯಾಯ ನೀತಿಗೆ ಉತ್ತೇಜನ ನೀಡುವ ದೃಷ್ಟಿಯಿಂದ, ಕಲಿಕೆಯ ವಿಧಾನಗಳು ಮತ್ತು ಸ್ಥಳಗಳು, ವ್ಯಾಸಂಗ ಕ್ರಮಗಳ ಸಂಯೋಜನೆ, ದಾಖಲಾತಿಗಾಗಿ ಅರ್ಹತೆ, ಪ್ರವೇಶದ ವಯಸ್ಸು, ಪರೀಕ್ಷೆಯನ್ನು ನಡೆಸುವುದು ಮತ್ತು ಕಾರ್ಯಕ್ರಮಗಳ ನಿರ್ವಹಣೆಗೆ ಸಂಬಂಧಿಸಿದಂತೆ ನಮ್ಯವಾದ (ಫ್ಲೆಕ್ಸಿಬಲ್) ಮತ್ತು ಮುಕ್ತವಾದ, ವಿಶ್ವವಿದ್ಯಾಲಯ ಮಟ್ಟದ ಶಿಕ್ಷಣದ ಅನ್ವೇಷಣಾ ಪದ್ಧತಿಯನ್ನು ಅಳವಡಿಸುವುದು ಹಾಗೂ ಜ್ಞಾನದ ಹೊಸ ಕ್ಷೇತ್ರಗಳಲ್ಲಿ ಉತ್ಕೃಷ್ಟತೆಗೆ ಪ್ರೋತ್ಸಾಹಿಸುವುದು, ಶೈಕ್ಷಣಿಕ ಮತ್ತು ಸಮನ್ವಯ ಕಲಿಕೆ, ಇವೆರೆಡಕ್ಕೂ ಸಮನಾದ ಪ್ರಾಮುಖ್ಯತೆಯನ್ನು ನೀಡುವುದು;

(xv) ತನ್ನ ಕಾರ್ಯನೀತಿಗಳು ಮತ್ತು ಕಾರ್ಯಕ್ರಮಗಳ ಮೂಲಕ ರಾಷ್ಟ್ರೀಯ ಸಮಗ್ರತೆ ಮತ್ತು ಮಾನವ ವ್ಯಕ್ತಿತ್ವದ ಸಮಗ್ರ ವಿಕಾಸಕ್ಕೆ ಪ್ರೋತ್ಸಾಹಿಸುವುದು.

**8. ವಿಶ್ವವಿದ್ಯಾಲಯದ ಅಧಿಕಾರಗಳು.–** ವಿಶ್ವವಿದ್ಯಾಲಯವು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗೆ ಅನುಸಾರವಾಗಿ ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿರ್ಧರಿಸಬಹುದಾದಂತೆ ಕ್ಯಾಂಪಸ್ಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಕರ್ನಾಟಕದಲ್ಲಿ ಸ್ಥಾಪಿಸುವುದು ಮತ್ತು ನಿರ್ವಹಿಸುವುದು;

(ii) ವಿಶ್ವವಿದ್ಯಾಲಯದ ಉದ್ದೇಶವನ್ನು ಕಾರ್ಯರೂಪಕ್ಕೆ ತರುವಲ್ಲಿ ಅಗತ್ಯವಾಗಬಹುದಾದ ಅಥವಾ ಕಾರ್ಯಸಾಧ್ಯವಾಗಬಹುದಾದ ಎಲ್ಲಾ ಅಂಥ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು;

(iii) ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಮತ್ತು ಷರತ್ತುಗಳಿಗೊಳಪಟ್ಟು ಪದವಿಗಳು ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರದಾನಮಾಡುವುದು;

(iv) ಪರಿನಿಯಮಗಳನ್ವಯ ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿ ವೇತನಗಳು ಮತ್ತು ಬಹುಮಾನಗಳು, ಅವಾರ್ಡುಗಳು, ಪಾರಿತೋಷಕಗಳು ಇತ್ಯಾದಿಗಳನ್ನು ಸ್ಥಾಪಿಸುವುದು ಮತ್ತು ನೀಡುವುದು;

(v) ಪರಿನಿಯಮಗಳಲ್ಲಿ ಅಥವಾ ಸಂದರ್ಭಾನುಸಾರವಾಗಿ ನಿಯಮಗಳಲ್ಲಿ ನಿಗದಿಪಡಿಸಬಹುದಾದ ಅಂಥ ಶುಲ್ಕಗಳು, ಬಿಲ್ಲುಗಳು, ಖರೀದಿ ಪಟ್ಟಿಗಳನ್ನು ಕೇಳಿಪಡೆದುಕೊಳ್ಳುವುದು ಮತ್ತು ಸ್ವೀಕರಿಸುವುದು ಹಾಗೂ ಚಾರ್ಜುಗಳನ್ನು ವಸೂಲು ಮಾಡುವುದು;

(vi) ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಪಠ್ಯೇತರ ಚಟುವಟಿಕೆಗಳಿಗೆ ಅವಕಾಶಗಳನ್ನು ಕಲ್ಪಿಸುವುದು;

(vii) ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಕ್ಯಾಂಪಸುಗಳ, ಪ್ರಾದೇಶಿಕ ಕೇಂದ್ರಗಳ, ಅಧ್ಯಯನ ಕೇಂದ್ರಗಳ ಫ್ಯಾಕಲ್ಟಿ, ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವುದು;

(viii) ವಿಶ್ವವಿದ್ಯಾಲಯದ ಅಥವಾ ಒಂದು ಘಟಕ ಕಾಲೇಜಿನ ಅಥವಾ ಕ್ಯಾಂಪಸ್ಸಿನ, ಪ್ರಾದೇಶಿಕ ಕೇಂದ್ರದ, ಅಧ್ಯಯನ ಕೇಂದ್ರದ ಉದ್ದೇಶಕ್ಕಾಗಿ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದಿರುವ, ಯಾವುದೇ ರೀತಿಯ ಸ್ವಯಂ ದೇಣಿಗೆಗಳು ಮತ್ತು ಕೊಡುಗೆಗಳನ್ನು ಸ್ವೀಕರಿಸುವುದು ಮತ್ತು ನ್ಯಾಸ ಮತ್ತು ದತ್ತಿ ಸ್ವತ್ತುಗಳೂ ಸೇರಿದಂತೆ, ಯಾವುದೇ ಚರ ಅಥವಾ ಸ್ಥಿರ ಸ್ವತ್ತನ್ನು ಅರ್ಜಿಸುವುದು, ಹೊಂದಿರುವುದು, ನಿರ್ವಹಿಸುವುದು, ನಡೆಸುವುದು ಮತ್ತು ಹಸ್ತಾಂತರ ಮಾಡುವುದು;

(ix) ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸಿಕೊಂಡು ಬರುವುದು ಹಾಗೂ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ ವಿದ್ಯಾರ್ಥಿಗಳಿಗೆ ವಸತಿ ಸ್ಥಳಗಳಾಗಿ ಮಾನ್ಯತೆ ನೀಡುವುದು;

(x) ವಸತಿಯ ಮೇಲ್ವಿಚಾರಣೆ ಮಾಡುವುದು ಮತ್ತು ನಿಯಂತ್ರಣ ಮಾಡುವುದು ಹಾಗೂ ವಿದ್ಯಾರ್ಥಿಗಳು ಮತ್ತು ಎಲ್ಲಾ ಪ್ರವರ್ಗಗಳ ಸಿಬ್ಬಂದಿಗಳಲ್ಲಿ ಶಿಸ್ತು ನಿಯಂತ್ರಣ ಮಾಡುವುದು ಮತ್ತು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ನಡತೆ ಸಂಹಿತೆಯನ್ನು ರೂಪಿಸುವುದೂ ಒಳಗೊಂಡಂತೆ, ಅಂಥ ಸಿಬ್ಬಂದಿಗಳ ಸೇವಾಷರತ್ತುಗಳನ್ನು ನಿರೂಪಿಸುವುದು;

(xi) ಶೈಕ್ಷಣಿಕ, ಆಡಳಿತಾತ್ಮಕ ಮತ್ತು ಬೆಂಬಲ ಸಿಬ್ಬಂದಿಯ ಹುದ್ದೆಗಳನ್ನು ಮತ್ತು ಇತರ ಅವಶ್ಯ ಹುದ್ದೆಗಳನ್ನು ಸೃಜಿಸುವುದು;

(xii) ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ಉದ್ದೇಶಗಳಿಗಾಗಿ ಇತರ ವಿಶ್ವವಿದ್ಯಾಲಯಗಳೊಡನೆ ಸಹಕರಿಸುವುದು ಮತ್ತು ಸಹಯೋಗ ಹೊಂದುವುದು;

(xiii) ಶಿಕ್ಷಕರಿಗೆ, ಪಾಠಗಳನ್ನು ರಚಿಸುವವರಿಗೆ, ಮೌಲ್ಯಮಾಪಕರಿಗೆ ಮತ್ತಿತರ ಶೈಕ್ಷಣಿಕ ಸಿಬ್ಬಂದಿಗೆ ಪುನರ್ಮನನ ವ್ಯಾಸಂಗಕ್ರಮಗಳು, ಅಭಿಮುಖ ವ್ಯಾಸಂಗ ಕ್ರಮಗಳು, ಕಾರ್ಯಾಗಾರಗಳು, ವಿಚಾರಗೋಷ್ಠಿಗಳು ಮತ್ತಿತರ ಕಾರ್ಯಕ್ರಮಗಳನ್ನು ಏರ್ಪಡಿಸುವುದು ಮತ್ತು ನಡೆಸುವುದು;

(xiv) ಶೈಕ್ಷಣಿಕ ಪರಿಷತ್ತಿನ ಅನುಮೋದನೆಯೊಂದಿಗೆ ವಿಶ್ವವಿದ್ಯಾಲಯಕ್ಕೆ ಅಥವಾ ಘಟಕ ಕಾಲೇಜಿಗೆ, ಪ್ರಾದೇಶಿಕ ಕೇಂದ್ರಗಳಿಗೆ, ಅಧ್ಯಯನ ಕೇಂದ್ರಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮತ್ತು ಈ ಅಧಿನಿಯಮದಲ್ಲಿ ಕಲ್ಪಿಸಿದ ವ್ಯಾಪ್ತಿಗಿಂತ ಕಡಿಮೆಯಿಲ್ಲದಂತೆ ಕರ್ನಾಟಕದ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮಾನಕ ಗುಣಮಟ್ಟಗಳನ್ನು ನಿರ್ಧರಿಸುವುದು;

(xv) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಕಾರ್ಯರೂಪಕ್ಕೆ ತರಲು ಅವಶ್ಯವಾಗಬಹುದಾದಂಥ ಇತರ ಎಲ್ಲಾ ಕ್ರಮಗಳನ್ನು ಅಥವಾ ಕಾರ್ಯಗಳನ್ನು, ಅವು ಮೇಲೆ ಹೇಳಿದ ಅಧಿಕಾರಗಳಿಗೆ ಪ್ರಾಸಂಗಿಕವಾಗಿರಲಿ ಅಥವಾ ಇಲ್ಲದಿರಲಿ, ಕೈಗೊಳ್ಳುವುದು;

(xvi) ಪರೀಕ್ಷೆಗಳ ಆಧಾರದ ಮೇಲೆ ಅಥವಾ ಸರ್ಕಾರದಿಂದ ಅನುಮೋದಿತವಾದ ಇತರ ಯಾವುದೇ ಮೌಲ್ಯಮಾಪನ ವಿಧಾನದ ಆಧಾರದ ಮೇಲೆ ನೀಡಲು ಪದವಿಗಳು, ಡಿಪ್ಲೋಮಾಗಳು, ಪ್ರಮಾಣಪತ್ರಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಸ್ಥಾಪಿಸುವುದು;

(xvii) ಫಿಲಂಗಳು, ಕ್ಯಾಸೆಟ್‌ಗಳು, ಧ್ವನಿಸುರುಳಿಗಳು, ದೃಶ್ಯಸುರುಳಿಗಳು, ಸಿ.ಡಿ., ವಿ.ಸಿ.ಡಿ. ಮತ್ತು ಇತರ ತಂತ್ರಾಂಶಗಳೂ ಹಾಗೂ ಇತರ ಸಂಬಂಧಿತ ವಿದ್ಯುನ್ಮಾನ ಮತ್ತು ಮುದ್ರಣ ಮಾಧ್ಯಮ ಸೇರಿದಂತೆ ಬೋಧಕ ಸಾಮಗ್ರಿಗಳನ್ನು ತಯಾರಿಸುವುದಕ್ಕಾಗಿ ಅವಕಾಶ ಕಲ್ಪಿಸುವುದು;

(xviiii) ಪ್ರಬಂಧಕ ಮಂಡಳಿಯ ಅನುಮೋದನೆಯೊಡನೆ ವಿಶ್ವವಿದ್ಯಾಲಯದ ಉದ್ದೇಶಗಳಿಗಾಗಿ ವಿಶ್ವವಿದ್ಯಾಲಯದ ಸ್ವತ್ತುಗಳನ್ನು ಭದ್ರತೆಯಾಗಿ ನೀಡಿ ಅಥವಾ ನೀಡದೆ ಹಣವನ್ನು ಪಡೆಯುವುದು, ಸಂಗ್ರಹಿಸುವುದು, ಚಂದಾದಾರರಾಗುವುದು ಮತ್ತು ಸಾಲ ಪಡೆಯುವುದು;

(xix) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುದೇ ಇತರ ಶೈಕ್ಷಣಿಕ ಸಂಸ್ಥೆಗಳ ಆಡಳಿತವನ್ನು ವಶಪಡಿಸಿಕೊಳ್ಳುವುದು, ವಹಿಸಿಕೊಳ್ಳುವುದು ಮತ್ತು ನಡೆಸುವುದು;

(xx) ವ್ಯವಸ್ಥಾಪನಾ ಮಂಡಳಿಯ ಪೂರ್ವಾನುಮೋದನೆಯೊಂದಿಗೆ ಸ್ವತ್ತುಗಳನ್ನು ಆರ್ಜಿಸುವುದು;

(xxi) ವಿಶ್ವವಿದ್ಯಾಲಯದ ಮೇಲಿನ ಉದ್ದೇಶಗಳಿಗೆ ಸಂಬಂಧಿಸಿದ ಅಥವಾ ಪ್ರಾಸಂಗಿಕವಾದ ಯಾವುದೇ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು.

**9. ವಿಶ್ವವಿದ್ಯಾಲಯವು ಎಲ್ಲಾ ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲರಿಗೂ ಮುಕ್ತವಾಗಿರತಕ್ಕದ್ದು.**– ವಿಶ್ವವಿದ್ಯಾಲಯದ ಪ್ರವೇಶಗಳು ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲಾ ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು. ಎಲ್ಲಾ ಪ್ರವೇಶಗಳನ್ನು ಅರ್ಹತಾ ಪರೀಕ್ಷೆಗಳಲ್ಲಿನ ಅರ್ಹತೆಯ ಆಧಾರದ ಮೇಲೆ ಮಾಡತಕ್ಕದ್ದು:

ಪರಂತು, ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳ ಪ್ರವೇಶದಲ್ಲಿ ಶೇಕಡಾ ನಲವತ್ತರಷ್ಟನ್ನು ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ಮೀಸಲಿಡತಕ್ಕದ್ದು ಮತ್ತು ಪ್ರವೇಶಗಳನ್ನು ರಾಜ್ಯ ಸರ್ಕಾರವು ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡತಕ್ಕದ್ದು ಮತ್ತು ಸೀಟುಗಳನ್ನು ಅರ್ಹತೆ ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ರೂಪಿಸುವ ಮೀಸಲಾತಿ ನೀತಿಗೆ ಅನುಸಾರವಾಗಿ ಹಂಚಿಕೆ ಮಾಡತಕ್ಕದ್ದು:

ಮತ್ತು ಪರಂತು, ಯಾವುದೇ ಕೋರ್ಸಿನಲ್ಲಿ ಹತ್ತಕ್ಕಿಂತ ಕಡಿಮೆ ಸೀಟುಗಳು ಇರುವಲ್ಲಿ, ಸ್ನಾತಕೋತ್ತರ, ಇಂಥ ಕೋರ್ಸುಗಳನ್ನು ಒಟ್ಟಿಗೆ ಒಂದುಗೂಡಿಸುವ ಮೂಲಕ ಮೀಸಲಿಡತಕ್ಕದ್ದು ಮತ್ತು ಯಾವುದೇ ಕೋರ್ಸಿನಲ್ಲಿ ಮೂರು ಸೀಟುಗಳಿಗಿಂತ ಕಡಿಮೆ ಇರುವಲ್ಲಿ, ಅವುಗಳನ್ನು ಸುತ್ತು ಸರದಿಯಲ್ಲಿ ಮೀಸಲಿಡತಕ್ಕದ್ದು.

**10. ರಾಷ್ಟ್ರೀಯ ಅಧಿಮಾನ್ಯತೆ.–** ವಿಶ್ವವಿದ್ಯಾಲಯವು ಪ್ರಾರಂಭವಾದ ತರುವಾಯ ಆದಷ್ಟು ಬೇಗನೆ ಸಂಬಂಧಪಟ್ಟ ಶಾಸನಾತ್ಮಕ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳಿಂದ ಅಧಿಮಾನ್ಯತೆಯನ್ನು ಕೋರತಕ್ಕದ್ದು ಮತ್ತು ಖಾಸಗಿ ವಿಶ್ವವಿದ್ಯಾಲಯಗಳು ನಡೆಸುವ ಎಲ್ಲಾ ವ್ಯಾಸಂಗ ಕ್ರಮಗಳು ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ವಿನಿಯಮಗಳಿಗೆ ಅನುಸಾರವಾಗಿ ಇರತಕ್ಕದ್ದು.

**11. ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು.–** ಪ್ರಾಯೋಜಕ ಸಂಸ್ಥೆಯು ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದಂತೆ ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಇವುಗಳಲ್ಲಿ ಪ್ರತಿಯೊಂದನ್ನು ಪ್ರಾಯೋಜಕ ಸಂಸ್ಥೆಯು ತನ್ನ ವಿವೇಚನಾನುಸಾರ ಚಲಾಯಿಸಬಹುದು, ಎಂದರೆ:–

(i) ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಪುನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(ii) ವಿಶ್ವವಿದ್ಯಾಲಯದ ಪ್ರಥಮ ಪ್ರಬಂಧಕ ಮಂಡಳಿಯನ್ನು ರಚಿಸುವುದು;

(iii) ಪ್ರಬಂಧಕ ಮಂಡಳಿಯ ಅಧ್ಯಕ್ಷರನ್ನು ನಾಮನಿರ್ದೇಶಿಸುವುದು;

(iv) ಪ್ರಬಂಧಕ ಮಂಡಳಿಯ ಸದಸ್ಯರಾಗಿ ಮೂರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(v) ವ್ಯವಸ್ಥಾಪನಾ ಮಂಡಳಿಯ ಸದಸ್ಯರಾಗಿ ಇಬ್ಬರು ವ್ಯಕ್ತಿಗಳನ್ನು ನಾಮ ನಿರ್ದೇಶಿಸುವುದು;

(vi) ವಿಶ್ವವಿದ್ಯಾಲಯದ ದತ್ತಿ ನಿಧಿಗೆ ದೇಣಿಗೆ ನೀಡಲು ನಿಧಿ ಮೂಲಗಳನ್ನು ನಿರ್ಧರಿಸುವುದು;

(vii) ವಿಶ್ವವಿದ್ಯಾಲಯದ ಹಣದ ವಿನಿಯೋಗ ಮತ್ತು ವೆಚ್ಚ ಮಾಡುವುದನ್ನು ನಿರ್ಧರಿಸುವುದು;

(viii) ಈ ಅಧಿನಿಯಮದಲ್ಲಿ ಉಪಬಂಧಿಸಿರುವ ವಿಧಾನದಲ್ಲಿ ಪ್ರಬಂಧಕ ಮಂಡಳಿಯ ಸಭೆಯಲ್ಲಿಯ ವಿವಾದಗಳನ್ನು ಬಗೆಹರಿಸುವುದು;

## ಅಧ್ಯಾಯ – III

## ವಿಶ್ವವಿದ್ಯಾಲಯದ ಅಧಿಕಾರಿಗಳು

**12. ವಿಶ್ವವಿದ್ಯಾಲಯದ ಅಧಿಕಾರಿಗಳು.–** ಈ ಮುಂದಿನವರು ವಿಶ್ವವಿದ್ಯಾಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:–

(i) ಸಂದರ್ಶಕರು;

(ii) ಸಹ–ಸಂದರ್ಶಕರು;

(iii) ಕುಲಾಧಿಪತಿಗಳು;

(iv) ಕುಲಪತಿಗಳು;

(v) ಸಹಕುಲಪತಿಗಳು;

(vi) ಕುಲಸಚಿವರು;

(vii) ಹಣಕಾಸು ಅಧಿಕಾರಿ; ಮತ್ತು

(viii) ಪರಿನಿಯಮಗಳ ಮೂಲಕ ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಘೋಷಿಸಬಹುದಾದಂಥ ಇತರ ಅಧಿಕಾರಿಗಳು.

**13. ಸಂದರ್ಶಕರು.–** (1) ಕರ್ನಾಟಕದ ಘನತೆವೆತ್ತ ರಾಜ್ಯಪಾಲರು ವಿಶ್ವವಿದ್ಯಾಲಯದ ಸಂದರ್ಶಕರಾಗಿರತಕ್ಕದ್ದು ಮತ್ತು ಸಂದರ್ಶಕರು ವಿಶ್ವವಿದ್ಯಾಲಯದ ಕಾರ್ಯನಿರ್ವಹಣೆಯ ಸುಧಾರಣೆಗಾಗಿ ಸಲಹೆಗಳನ್ನು ನೀಡಬಹುದು.

(2) ಸಂದರ್ಶಕರು, ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಸಂದರ್ಶಕರು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ವ್ಯವಹಾರಗಳಿಗೆ ಸಂಬಂಧಿಸಿದಂತೆ, ಯಾವುದೇ ಪತ್ರ ಅಥವಾ ಮಾಹಿತಿಯನ್ನು ತರಿಸಿಕೊಳ್ಳುವುದು.

(ii) ಸಂದರ್ಶಕರು, ಅವರು ಸ್ವೀಕರಿಸಿದ ಮಾಹಿತಿಯ ಆಧಾರದ ಮೇಲೆ ವಿಶ್ವವಿದ್ಯಾಲಯಗಳ ಯಾವುದೇ ಪ್ರಾಧಿಕಾರವು ಮಾಡಿದ ಯಾವುದೇ ಆದೇಶ, ನಡೆಸಿದ ವ್ಯವಹರಣೆಗಳು ಅಥವಾ ಕೈಗೊಂಡ ತೀರ್ಮಾನಗಳು, ಈ ಅಧಿನಿಯಮಕ್ಕೆ, ವಿನಿಯಮಗಳಿಗೆ ಅಥವಾ ನಿಯಮಗಳಿಗೆ ಪೂರಕವಾಗಿಲ್ಲವೆಂದು ಮನಗಂಡರೆ ಅವರು ವಿಶ್ವವಿದ್ಯಾಲಯದ ಹಿತಾಸಕ್ತಿಯಿಂದ ತಾವು ಸೂಕ್ತವೆಂದು ಭಾವಿಸಬಹುದಾದ ಅಂಥ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಹಾಗೆ ಹೊರಡಿಸಿದ ನಿರ್ದೇಶನಗಳನ್ನು ಸಂಬಂಧಪಟ್ಟವರೆಲ್ಲರೂ ಪಾಲಿಸತಕ್ಕದ್ದು.

**14. ಸಹ-ಸಂದರ್ಶಕರು.**- (1) ಕರ್ನಾಟಕ ಸರ್ಕಾರದ ಮಾನ್ಯ ಉನ್ನತ ಶಿಕ್ಷಣ ಸಚಿವರು ವಿಶ್ವವಿದ್ಯಾಲಯದ ಸಹ-ಸಂದರ್ಶಕರಾಗಿರತಕ್ಕದ್ದು.

(2) ಸಂದರ್ಶಕರ ಅನುಪಸ್ಥಿತಿಯಲ್ಲಿ ಸಹ-ಸಂದರ್ಶಕರು ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**15. ಕುಲಾಧಿಪತಿಗಳು.**- (1) ಕುಲಾಧಿಪತಿಯವರನ್ನು ಪ್ರಾಯೋಜಕ ಸಂಸ್ಥೆಯು ನೇಮಿಸತಕ್ಕದ್ದು.

(2) ಪ್ರಾಯೋಜಕ ಸಂಸ್ಥೆಯ ಸಂಸ್ಥಾಪಿತ ನ್ಯಾಸಧಾರಿಯು ಮೊದಲನೇ ಕುಲಾಧಿಪತಿಗಳಾಗಿರತಕ್ಕದ್ದು, ಅವರು ತಮ್ಮ ಜೀವನಪರ್ಯಂತ ಅಥವಾ ಅವರು ತಮ್ಮ ಪದವನ್ನು ಬಿಟ್ಟುಕೊಡುವವರೆಗೆ ಕುಲಾಧಿಪತಿಗಳಾಗಿ ಪದಧಾರಣ ಮಾಡಿರತಕ್ಕದ್ದು.

(3) ತದನಂತರದ ಕುಲಾಧಿಪತಿಗಳು, ಅಂಥ ನೇಮಕಾತಿಯನ್ನು ಪರಿಗಣಿಸುವ ಸಂದರ್ಭದಲ್ಲಿ ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ, ಪ್ರಾಯೋಜಕ ಸಂಸ್ಥೆಯ ನ್ಯಾಸಧಾರಿಯಾಗಿರತಕ್ಕದ್ದು ಅಥವಾ ಶಿಕ್ಷಣ, ವಿಜ್ಞಾನ, ಸಂಸ್ಕೃತಿ ಅಥವಾ ಸಾರ್ವಜನಿಕ ಜೀವನ ಕ್ಷೇತ್ರಗಳಲ್ಲಿ ರಾಷ್ಟ್ರೀಯ ಮಟ್ಟದ ಛಾಪನ್ನು ಪಡೆದಿರುವ ಅಂಥ ಇತರ ವ್ಯಕ್ತಿಯಾಗಿರತಕ್ಕದ್ದು.

(4) ಹಾಗೆ ನೇಮಕಗೊಂಡ ತದನಂತರದ ಕುಲಾಧಿಪತಿಗಳು ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ಪದಧಾರಣ ಮಾಡತಕ್ಕದ್ದು.

(5) ಕುಲಾಧಿಪತಿಗಳು ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳ ಅಡಿಯಲ್ಲಿ ಅವರಿಗೆ ಪ್ರದಾನ ಮಾಡಬಹುದಾದಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು, ಅವುಗಳಲ್ಲಿ ಈ ಮುಂದಿನ ಅಧಿಕಾರಗಳು ಒಳಗೊಂಡಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುವುದು;

(ii) ಸಂದರ್ಶಕರ ಮತ್ತು ಸಹ-ಸಂದರ್ಶಕರಿಬ್ಬರ ಗೈರುಹಾಜರಿಯಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಘಟಿಕೋತ್ಸವಗಳಲ್ಲಿ ಅಧ್ಯಕ್ಷತೆಯನ್ನು ವಹಿಸುವುದು;

(iii) ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವುದು;

(iv) ಈ ಅಧಿನಿಯಮ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಅನುಸಾರವಾಗಿ ಕುಲಪತಿಗಳನ್ನು ನೇಮಿಸುವುದು ಅಥವಾ ಮನರ್ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(v) ಈ ಅಧಿನಿಯಮದ 16ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ನಾಮನಿರ್ದೇಶಕ ಸಮಿತಿಯ ಸದಸ್ಯರಾಗಿ ಒಬ್ಬ ವ್ಯಕ್ತಿಯನ್ನು ನಾಮನಿರ್ದೇಶನ ಮಾಡುವುದು;

(vi) ಸಹಕುಲಪತಿಗಳು, ಡೀನ್, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿಗಳ ನೇಮಕಾತಿಯನ್ನು ಪೂರ್ವಾನುಮೋದಿಸುವುದು;

(vii) ಪ್ರಬಂಧಕ ಮಂಡಳಿಯ ಸದಸ್ಯರನ್ನಾಗಿ ಇಬ್ಬರು ಶಿಕ್ಷಣ ತಜ್ಞರನ್ನು ನಾಮನಿರ್ದೇಶಿಸುವುದು;

(viii) ಮೊದಲ ಸಹಕುಲಪತಿಗಳು ಮತ್ತು ಹಣಕಾಸು ಅಧಿಕಾರಿಗಳನ್ನು ನೇಮಿಸುವುದು;

(ix) ಮೊದಲ ವ್ಯವಸ್ಥಾಪನಾ ಮಂಡಳಿ, ಹಣಕಾಸು ಸಮಿತಿ, ಸಂಶೋಧನಾ ಪರಿಷತ್ತು ಹಾಗೂ ಶೈಕ್ಷಣಿಕ ಪರಿಷತ್ತುಗಳನ್ನು ರಚಿಸುವುದು;

(x) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ ಕಾರ್ಯಸೂಚಿ ವಿಷಯಗಳನ್ನು ಪೂರ್ವಾನುಮೋದಿಸುವುದು;

(xi) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ (ಪ್ರಬಂಧಕ ಮಂಡಳಿಯ ಸಭೆಯಲ್ಲಿ ಉಂಟಾದ ವಿವಾದಗಳನ್ನು ಹೊರತುಪಡಿಸಿ) ವಿವಾದಗಳನ್ನು ಪರಿಹರಿಸುವುದು.

(6) ಪದಾಧಿಕಾರಿ ಅಥವಾ ಪದಾಧಿಕಾರಿಗಳು ಅಥವಾ ಸಂಸ್ಥೆ ಅಥವಾ ಸಂಸ್ಥೆಗಳು ಮತ್ತು ವಿಶ್ವವಿದ್ಯಾಲಯದ ಯಾವುದೇ ಇತರ ಪದಾಧಿಕಾರಿ ಅಥವಾ ಸಂಸ್ಥೆಗಳ ನಡುವೆ ವಿವಾದಗಳು ಉಂಟಾದಲ್ಲಿ, ಆ ವಿವಾದವನ್ನು ಕುಲಾಧಿಪತಿಯವರ ಪರ್ಯಾಲೋಚನೆಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿವಾದದ ಸಂದರ್ಭದಲ್ಲಿ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**16. ಕುಲಪತಿಗಳು.–** (1) (2)ನೇ ಉಪಪ್ರಕರಣದ ಉಪಬಂಧಗಳಿಗೆ ಅನುಸಾರವಾಗಿ ನಾಮನಿರ್ದೇಶಕ ಸಮಿತಿಯು ಶಿಫಾರಸ್ಸು ಮಾಡಿದ ಮೂರು ವ್ಯಕ್ತಿಗಳ ಪೈಕಿಯಿಂದ ಒಬ್ಬರನ್ನು ಮೂರು ವರ್ಷಗಳ ಅವಧಿಗಾಗಿ ಕುಲಪತಿಗಳನ್ನಾಗಿ, ಪರಿನಿಯಮಗಳಲ್ಲಿ ನಿಯಮಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರು ನೇಮಿಸತಕ್ಕದ್ದು. ಮೂರು ವರ್ಷಗಳ ಅವಧಿಯು ಮುಗಿದ ತರುವಾಯ, ಇದನ್ನು ಮೂರು ವರ್ಷಗಳ ಮತ್ತೊಂದು ಅವಧಿಗೆ ನವೀಕರಿಸಬಹುದು:

ಪರಂತು, ಕುಲಪತಿಯವರು, ತಮ್ಮ ಅವಧಿ ಮುಗಿದ ನಂತರವೂ ಹೊಸ ಕುಲಪತಿಯವರು ಸೇರಿಕೊಳ್ಳುವವರೆಗೆ ಪದದಲ್ಲಿ ಮುಂದುವರೆಯತಕ್ಕದ್ದು. ಆದಾಗ್ಯೂ ಈ ಅವಧಿಯು ಯಾವುದೇ ಸಂದರ್ಭದಲ್ಲಿ ಒಂದು ವರ್ಷವನ್ನು ಮೀರತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಹೇಳಿರುವ ನಾಮನಿರ್ದೇಶಕ ಸಮಿತಿಯಲ್ಲಿ ಈ ಮುಂದಿನ ವ್ಯಕ್ತಿಗಳು ಇರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು ನಾಮನಿರ್ದೇಶಿಸಿದ ಒಬ್ಬ ವ್ಯಕ್ತಿ;

(ii) ಪ್ರಬಂಧಕ ಮಂಡಳಿಯ ಇಬ್ಬರು ನಾಮ ನಿರ್ದೇಶಿತರು, ಇವರಲ್ಲಿ ಒಬ್ಬರನ್ನು ಪ್ರಬಂಧಕ ಮಂಡಳಿಯು ಸಮಿತಿಯ ಸಂಚಾಲಕರೆಂದು ನಾಮನಿರ್ದೇಶಿಸತಕ್ಕದ್ದು.

(3) ನಾಮನಿರ್ದೇಶಕ ಸಮಿತಿಯು, ಅರ್ಹತೆಯ ಆಧಾರದ ಮೇಲೆ ಕುಲಪತಿಯ ಹುದ್ದೆಗೆ ಸೂಕ್ತವಾದ ಮೂರು ವ್ಯಕ್ತಿಗಳ ಹೆಸರನ್ನು ಶಿಫಾರಸ್ಸು ಮಾಡತಕ್ಕದ್ದು ಮತ್ತು ಅದನ್ನು ಪ್ರತಿಯೊಬ್ಬ ವ್ಯಕ್ತಿಯ ವಿದ್ಯಾರ್ಹತೆ ಮತ್ತಿತರ ವಿಶಿಷ್ಟ ಪ್ರಶಸ್ತಿಗಳನ್ನು ತಿಳಿಸುವ ಒಂದು ಸಂಕ್ಷಿಪ್ತ ವರದಿಯೊಂದಿಗೆ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು.

(4) ಕುಲಪತಿಯವರು ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಾಹಕ ಮತ್ತು ಶೈಕ್ಷಣಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣವನ್ನು ಚಲಾಯಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯದ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೊಳಿಸತಕ್ಕದ್ದು:

ಪರಂತು, ಶಿಕ್ಷಕರ ನೇಮಕಾತಿಯನ್ನು ಹೊರತುಪಡಿಸಿ ಕೂಡಲೇ ಕ್ರಮವನ್ನು ಕೈಗೊಳ್ಳಬೇಕಾದ ತುರ್ತು ಸ್ವರೂಪದ ಯಾವುದೇ ಇತರ ವಿಷಯಗಳಲ್ಲಿ ಮತ್ತು ಅದನ್ನು ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ವಿಶ್ವವಿದ್ಯಾಲಯವು ಇದಕ್ಕಾಗಿ ಅಧಿಕೃತಗೊಳಿಸಿದ್ದ ಯಾವೊಬ್ಬ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ಇತರ ಸಂಸ್ಥೆಯು ಕೂಡಲೇ ಕ್ರಮಕೈಗೊಳ್ಳುವುದು ಸಾಧ್ಯವಿರದಿರುವಾಗ ಕುಲಪತಿಯವರು ತಾನು ಸೂಕ್ತವೆಂದು ಭಾವಿಸಬಹುದಾದಂತಹ ಕ್ರಮವನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆದು ಕೈಗೊಳ್ಳತಕ್ಕದ್ದು.

(5) ಕುಲಪತಿಯವರು ಪರಿನಿಯಮಗಳು ಅಥವಾ ನಿಯಮಗಳಲ್ಲಿ ಹೇಳಲಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು:

ಪರಂತು, ಕುಲಪತಿಗಳ ಅಭಿಪ್ರಾಯದಲ್ಲಿ, ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಯಾವುದೇ ನಿರ್ಣಯವು, ಈ ಅಧಿನಿಯಮ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳು, ವಿನಿಯಮಗಳು ಅಥವಾ ನಿಯಮಗಳ ಮೂಲಕ ಪ್ರದತ್ತವಾದ ಅಧಿಕಾರದ ಹೊರಗಿದ್ದರೆ ಅಥವಾ ವಿಶ್ವವಿದ್ಯಾಲಯದ ಹಿತಾಸಕ್ತಿಗೆ ಪ್ರತಿಕೂಲವಾಗಬಹುದಾಗಿದ್ದರೆ, ಅದರ ನಿರ್ಣಯದ ದಿನಾಂಕದಿಂದ ಹದಿನೈದು ದಿನಗಳ ಒಳಗೆ ತನ್ನ ನಿರ್ಣಯವನ್ನು ಪರಿಷ್ಕರಿಸಲು ಸಂಬಂಧಪಟ್ಟ ಪ್ರಾಧಿಕಾರವನ್ನು ಆತನು ಕೋರತಕ್ಕದ್ದು ಮತ್ತು ಪ್ರಾಧಿಕಾರವು ಅಂಥ ನಿರ್ಣಯವನ್ನು ಸಂಪೂರ್ಣವಾಗಿ ಅಥವಾ ಭಾಗಶಃವಾಗಿ ಪರಿಷ್ಕರಿಸಲು ನಿರಾಕರಿಸಿದ ಸಂದರ್ಭದಲ್ಲಿ ಅಥವಾ ಹದಿನೈದು ದಿನಗಳೊಳಗೆ ಯಾವುದೇ ನಿರ್ಣಯವನ್ನು ತೆಗೆದುಕೊಳ್ಳಲು ವಿಫಲವಾದಲ್ಲಿ, ನಂತರ ಅಂಥ ವಿಷಯವನ್ನು ಕುಲಾಧಿಪತಿಗಳಿಗೆ ಕಳುಹಿಸತಕ್ಕದ್ದು ಮತ್ತು ಈ ಬಗ್ಗೆ ಇವರ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

(6) ಕುಲಪತಿಯವರ ಸೇವೆಗಳನ್ನು, ಪ್ರಬಂಧಕ ಮಂಡಳಿಯ ಅನುಮೋದನೆಯೊಂದಿಗೆ ಮತ್ತು ಸಹಜ ನ್ಯಾಯದ ತತ್ವಗಳನ್ನು ಅನುಸರಿಸಿದ ನಂತರ ಹಾಗೂ ಶಿಸ್ತಿನ ಆಧಾರದ ಮೇಲೆ ಅಂತ್ಯಗೊಳಿಸುವ ಸಂದರ್ಭವೂ ಸೇರಿದಂತೆ,

ಪ್ರಕರಣದ ಬಗ್ಗೆ ಕುಲಪತಿಯು ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡಿದ ತರುವಾಯ, ಕುಲಾಧಿಪತಿಯವರು ಅಂತ್ಯಗೊಳಿಸಬಹುದು.

(7) ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಸಂದರ್ಶಕರು, ಸಹ-ಸಂದರ್ಶಕರು ಮತ್ತು ಕುಲಾಧಿಪತಿಯವರು ಇವರುಗಳ ಗೈರು ಹಾಜರಿಯ ಸಂದರ್ಭದಲ್ಲಿ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**17. ಸಹಕುಲಪತಿಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಮೂರು ಜನರನ್ನು ಮೀರದಂತೆ ಸಹಕುಲಪತಿಗಳನ್ನು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**18. ವ್ಯಾಸಂಗ ವಿಭಾಗಗಳ ಡೀನ್‌ಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಪರಿನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವ್ಯಾಸಂಗ ವಿಭಾಗಗಳ ಡೀನ್‌ಗಳನ್ನು ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**19. ಕುಲಸಚಿವರು.–**(1) ಕುಲಾಧಿಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಸಚಿವರನ್ನು ನೇಮಕ ಮಾಡತಕ್ಕದ್ದು.

(2) ಪರಿನಿಯಮಗಳಲ್ಲಿ ಪರಿಭಾಷಿಸಿರುವಂಥ ಎಲ್ಲಾ ಕರಾರುಗಳನ್ನು ವಿಶ್ವವಿದ್ಯಾಲಯದ ಪರವಾಗಿ ಕುಲಸಚಿವರು ಮಾಡಿಕೊಳ್ಳತಕ್ಕದ್ದು ಮತ್ತು ಅದಕ್ಕೆ ಸಹಿ ಹಾಕತಕ್ಕದ್ದು.

(3) ಕುಲಸಚಿವರು ವಿಶ್ವವಿದ್ಯಾಲಯದ ಪರವಾಗಿ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಪರಿನಿಯಮಗಳಿಂದ ಪ್ರದತ್ತಗೊಳಿಸಬಹುದಾದಂಥ ಅಥವಾ ಕುಲಾಧಿಪತಿಯವರು ಮತ್ತು ಕುಲಪತಿಯವರು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು ವಿಶ್ವವಿದ್ಯಾಲಯದ ದಾಖಲೆಗಳು ಮತ್ತು ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು, ಕುಲಪತಿಯವರು ಅಥವಾ ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಅಂಥ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿತಕ್ಕದ್ದು.

**20. ಹಣಕಾಸು ಅಧಿಕಾರಿ.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು, ಪರಿನಿಯಮಗಳ ಮೂಲಕ ಪ್ರದತ್ತಗೊಳಿಸಬಹುದಾದ ಅಂಥ ವಿಧಾನದಲ್ಲಿ ಹಣಕಾಸು ಅಧಿಕಾರಿಯನ್ನು ನೇಮಕ ಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**21. ಇತರ ಅಧಿಕಾರಿಗಳು.–** ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ ನೇಮಕಾತಿಯ ವಿಧಾನ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಕರ್ತವ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ – IV

## ವಿಶ್ವವಿದ್ಯಾಲಯದ ಪ್ರಾಧಿಕಾರಗಳು

**22. ವಿಶ್ವವಿದ್ಯಾಲಯದ ಪ್ರಾಧಿಕಾರಗಳು.–** ಈ ಮುಂದಿನವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:–

(i) ಪ್ರಬಂಧಕ ಮಂಡಳಿ;

(ii) ವ್ಯವಸ್ಥಾಪನ ಮಂಡಳಿ;

(iii) ಶೈಕ್ಷಣಿಕ ಪರಿಷತ್ತು;

(iv) ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು;

(v) ಹಣಕಾಸು ಸಮಿತಿ; ಮತ್ತು

(vi) ವಿಶ್ವವಿದ್ಯಾಲಯದ ಪ್ರಾಧಿಕಾರಗಳೆಂದು ಪರಿನಿಯಮಗಳ ಮೂಲಕ ಘೋಷಿಸಬಹುದಾದ ಅಂಥ ಇತರ ಪ್ರಾಧಿಕಾರಗಳು.

**23. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು.–** (1) ಪ್ರಬಂಧಕ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು – ಅಧ್ಯಕ್ಷರು;

(ii) ಕುಲಪತಿಯವರು – ಸದಸ್ಯರು;

(iii) ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(iv) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(v) ರಾಜ್ಯ ಸರ್ಕಾರವು ನಾಮ ನಿರ್ದೇಶನ ಮಾಡಿದ ಆಡಳಿತವನ್ನು ಒಳಗೊಂಡಂತೆ ವ್ಯವಸ್ಥಾಪನೆ, ಹಣಕಾಸು ಅಥವಾ ಯಾವುದೇ ಇತರ ವಿಶೇಷ ಕ್ಷೇತ್ರದಲ್ಲಿನ ಒಬ್ಬರು ತಜ್ಞರು;

(vi) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಇಬ್ಬರು ವ್ಯಕ್ತಿಗಳು ಅವರ ಪೈಕಿ ಒಬ್ಬರು ಮಹಿಳೆಯಾಗಿರತಕ್ಕದ್ದು;

(vii) ಸಹ ಕುಲಪತಿಯವರು ಮತದಾನದ ಹಕ್ಕಿಲ್ಲದ ಸದಸ್ಯರಾಗಿರತಕ್ಕದ್ದು;

(viii) ವಿಶ್ವವಿದ್ಯಾಲಯ ಅನುದಾನ ಆಯೋಗದ ನಾಮನಿರ್ದೇಶಿತ ಒಬ್ಬ ಸುಪ್ರಸಿದ್ಧ ಶಿಕ್ಷಣ ತಜ್ಞರು.

(2) ಕುಲಸಚಿವರು ಪ್ರಬಂಧಕ ಮಂಡಳಿಯ ಮತ ದಾನದ ಹಕ್ಕಿರದ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ಪ್ರಬಂಧಕ ಮಂಡಳಿಯ ಸದಸ್ಯರ ಪದಾವಧಿ, ಸರ್ಕಾರದಿಂದ ನಾಮನಿರ್ದೇಶಿತರಾದ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ನೇಮಕಾತಿ, ನವೀಕರಣ ಮತ್ತು ತೆಗೆದುಹಾಕುವುದು ಮುಂತಾದವುಗಳು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಾಧಿಪತಿಯವರು ಯಾವಾಗಲೂ ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರ ಗೈರುಹಾಜರಿಯಲ್ಲಿ ಕುಲಾಧಿಪತಿಯವರಿಂದ ನಾಮನಿರ್ದೇಶಿತರಾದ ಯಾರಾದರೂ ಒಬ್ಬರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು. ಅಂಥ ಸಭೆಯ ಅಧ್ಯಕ್ಷತೆಯನ್ನು ವಹಿಸುವುದಕ್ಕೆ ಕುಲಾಧಿಪತಿಯವರು ಯಾವೊಬ್ಬ ವ್ಯಕ್ತಿಯನ್ನೂ ನಾಮನಿರ್ದೇಶನ ಮಾಡಿರದಿದ್ದಲ್ಲಿ, ಸಭೆಯಲ್ಲಿ ಹಾಜರಿರುವ ಸದಸ್ಯರು ಸರಳ ಬಹುಮತದ ಮೂಲಕ ಅವರುಗಳ ಪೈಕಿಯಿಂದಲೇ ಆ ಸಭೆಗೆ ಮಾತ್ರವೇ ಅಧ್ಯಕ್ಷನನ್ನು ಚುನಾಯಿಸತಕ್ಕದ್ದು.

(5) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಿಗೆ, ಅಂಥ ಸಭೆಯಲ್ಲಿ ಹಾಜರಾಗುವ ಮತ್ತು ಮತದಾನ ನೀಡುವ ಮೂರು ಜನ ಸದಸ್ಯರು ಗಣಪೂರ್ತಿ (ಕೋರಂ) ಆಗಿರತಕ್ಕದ್ದು:

ಪರಂತು, ಪ್ರಬಂಧಕ ಮಂಡಳಿಯ ಯಾವುದೇ ಸಭೆಯ ಕೋರಂ ಪೂರ್ಣವಾಗಬೇಕಾದರೆ ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಿರುವುದು ಮತ್ತು ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ನಾಮನಿರ್ದೇಶಿತರು ಹಾಜರಾಗದೇ ಇದ್ದಾಗ ಕುಲಪತಿಯವರು ಹಾಜರಿರುವುದು ಯಾವಾಗಲೂ ಅವಶ್ಯವಾಗಿರತಕ್ಕದ್ದು.

(6) ಪ್ರಬಂಧಕ ಮಂಡಳಿಯು ವಿಶ್ವವಿದ್ಯಾಲಯದ ಪ್ರಧಾನ ಪ್ರಬಂಧಕ ಸಂಸ್ಥೆಯಾಗಿರತಕ್ಕದ್ದು ಮತ್ತು ಅದು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಕಗೊಳಿಸುವುದು;

(ii) ವಿಶ್ವವಿದ್ಯಾಲಯವು ಅನುಸರಿಸಬೇಕಾದ ಕಾರ್ಯನೀತಿಗಳನ್ನು ರಚಿಸುವುದು;

(iii) ಈ ಅಧಿನಿಯಮದ ಅಥವಾ ಪರಿನಿಯಮಗಳ ಅಥವಾ ನಿಯಮಗಳ ಉಪಬಂಧಗಳಿಗೆ ಅನುಗುಣವಾಗಿ ಇರದ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ತೀರ್ಮಾನಗಳನ್ನು ಪುನರೀಕ್ಷಿಸುವುದು;

(iv) ವಿಶ್ವವಿದ್ಯಾಲಯದ ಆಯವ್ಯಯ ಮತ್ತು ವಾರ್ಷಿಕ ವರದಿಗಳನ್ನು ಅನುಮೋದಿಸುವುದು;

(v) ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸುವುದು ಅಥವಾ ಈಗಾಗಲೇ ಇರುವ ಪರಿನಿಯಮಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವುದು ಅಥವಾ ನಿರಸನಗೊಳಿಸುವುದು;

(vi) ವಿಶ್ವವಿದ್ಯಾಲಯವನ್ನು ಸ್ವಯಂಸಮಾಪನಗೊಳಿಸುವ ನಿರ್ಧಾರವನ್ನು ತೆಗೆದುಕೊಳ್ಳುವುದು;

(vii) ಸರ್ಕಾರಕ್ಕೆ ಸಲ್ಲಿಸುವ ಪ್ರಸ್ತಾವಗಳನ್ನು ಅನುಮೋದಿಸುವುದು;

(viii) ಶುಲ್ಕ ನಿಯಂತ್ರಣ ಸಮಿತಿಗೆ ಮೂವರು ಸದಸ್ಯರನ್ನು ನಾಮನಿರ್ದೇಶನ ಮಾಡುವುದು;

(ix) ವಿಶ್ವವಿದ್ಯಾಲಯದ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕೆ ಅಪೇಕ್ಷಣೀಯವೆಂದು ಕಂಡುಬರುವಂಥ ತೀರ್ಮಾನಗಳನ್ನು ಮತ್ತು ಕ್ರಮಗಳನ್ನು ಕೈಗೊಳ್ಳುವುದು.

(7) ಪ್ರಬಂಧಕ ಮಂಡಳಿಯು ಒಂದು ವರ್ಷದಲ್ಲಿ ಕನಿಷ್ಠ ಮೂರು ಸಲ ಸಭೆ ಸೇರತಕ್ಕದ್ದು.

**24. ವ್ಯವಸ್ಥಾಪನಾ ಮಂಡಳಿ.**– (1) ವ್ಯವಸ್ಥಾಪನಾ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಗಳು;

(ii) ಸಹಕುಲಪತಿಗಳು;

(iii) ಕುಲಸಚಿವರು;

(iv) ಪ್ರಾಯೋಜಕ ಸಂಸ್ಥೆಯ ಇಬ್ಬರು ನಾಮನಿರ್ದೇಶಿತರು;

(v) ಕುಲಪತಿಗಳು ನಾಮನಿರ್ದೇಶಿಸಬಹುದಾದ ವಿದ್ಯಾಲಯಗಳ ಇಬ್ಬರು ಡೀನ್‌ಗಳು;

(2) ಕುಲಪತಿಯವರು ವ್ಯವಸ್ಥಾಪನಾ ಮಂಡಳಿಯ ಅಧ್ಯಕ್ಷರಾಗಿರತಕ್ಕದ್ದು ಮತ್ತು ಕುಲಸಚಿವರು ವ್ಯವಸ್ಥಾಪನಾ ಮಂಡಳಿಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ವ್ಯವಸ್ಥಾಪನಾ ಮಂಡಳಿಯು ವಿಶ್ವವಿದ್ಯಾಲಯದ ಕಾರ್ಯನಿರ್ವಾಹಕ ಸಂಸ್ಥೆಯಾಗಿರತಕ್ಕದ್ದು. ವ್ಯವಸ್ಥಾಪನಾ ಮಂಡಳಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ವ್ಯವಸ್ಥಾಪನಾ ಮಂಡಳಿಯ ಎಲ್ಲಾ ಸಭೆಗಳಲ್ಲಿ ಯಾವಾಗಲೂ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು ಹಾಗೂ ಕುಲಪತಿಯವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೇ ಇದ್ದ ಸಂದರ್ಭದಲ್ಲಿ ಸಭೆಯಲ್ಲಿ ಹಾಜರಿರುವ ಸದಸ್ಯರು ಚುನಾಯಿಸಿದ ಯಾವುದೇ ಇತರ ಸದಸ್ಯರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ವ್ಯವಸ್ಥಾಪನಾ ಮಂಡಳಿಯ ಸಭೆಯಲ್ಲಿ ಯಾವುದೇ ವಿಷಯವನ್ನು ಕುರಿತು ವಿವಾದ ಉಂಟಾದಲ್ಲಿ ಸದರಿ ವಿಷಯವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯದ ಬಗ್ಗೆ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**25. ಶೈಕ್ಷಣಿಕ ಪರಿಷತ್ತು.**–(1) ಶೈಕ್ಷಣಿಕ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಕಾರ್ಯದರ್ಶಿಗಳು

(iv) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಶೈಕ್ಷಣಿಕ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಶೈಕ್ಷಣಿಕ ಸಂಸ್ಥೆಯಾಗಿರತಕ್ಕದ್ದು ಮತ್ತು ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಹಾಗೂ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**26. ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು.**– (1) ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಸಂಶೋಧನೆ ಮತ್ತು ಅನ್ವೇಷಣಾ ಸಮಿತಿಯಾಗಿರತಕ್ಕದ್ದು ಹಾಗೂ ಸಂಶೋಧನೆ ಮತ್ತು ಅನ್ವೇಷಣಾ ಕ್ಷೇತ್ರಗಳ ಆದ್ಯತೆಯೂ ಒಳಗೊಂಡಂತೆ, ವಿಶ್ವವಿದ್ಯಾಲಯವು ಕೈಗೊಳ್ಳಬೇಕಾದ ಸಂಶೋಧನೆ ಮತ್ತು ಅನ್ವೇಷಣೆಯ ಬಗ್ಗೆ ಒಂದು ವ್ಯಾಪಕವಾದ ಪರಿಪೂರ್ಣ ಭವಿಷ್ಯದ್ ದೃಷ್ಟಿಯನ್ನು ಒದಗಿಸತಕ್ಕದ್ದು. ಈ ಪರಿಷತ್ತು, ಈ

ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಮತ್ತು ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಸಂಶೋಧನೆ ಮತ್ತು ಅನ್ವೇಷಣಾ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಸಂಶೋಧನೆಯ ಡೀನ್ – ಕಾರ್ಯದರ್ಶಿ

(iv) ಅನ್ವೇಷಣಾ ವಿಭಾಗದ ಮುಖ್ಯಸ್ಥರು – ಸದಸ್ಯರು

(v) ಎಲ್ಲಾ ವ್ಯಾಸಂಗ ವಿಭಾಗಗಳ ಡೀನ್‌ಗಳು – ಸದಸ್ಯರು ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

**27. ಹಣಕಾಸು ಸಮಿತಿ.**- (1) ಹಣಕಾಸು ಸಮಿತಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಾಧಿಪತಿಯವರು ಅಥವಾ ಅವರ ನಾಮನಿರ್ದೇಶಿತರು – ಅಧ್ಯಕ್ಷರು

(ii) ಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಸದಸ್ಯರು

(iv) ಹಣಕಾಸು ಅಧಿಕಾರಿ – ಕಾರ್ಯದರ್ಶಿ

(v) ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು – ಸದಸ್ಯರು; ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಹಣಕಾಸು ಸಮಿತಿಯು ಹಣಕಾಸಿನ ವಿಷಯಗಳನ್ನು ಕೈಗೊಳ್ಳುವ ವಿಶ್ವವಿದ್ಯಾಲಯದ ಪ್ರಧಾನ ಹಣಕಾಸು ಸಂಸ್ಥೆಯಾಗಿರತಕ್ಕದ್ದು ಹಾಗೂ ಅದು ಈ ಅಧಿನಿಯಮ, ನಿಯಮಗಳು ಮತ್ತು ಪರಿನಿಯಮಗಳ ಉಪಬಂಧಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಹಣಕಾಸು ವಿಷಯಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**28. ಇತರ ಪ್ರಾಧಿಕಾರಗಳು.**- ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ರಚನೆ, ಅಧಿಕಾರಗಳು ಹಾಗೂ ಪ್ರಕಾರ್ಯಗಳು ಪರಿನಿಯಮಗಳಿಂದ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

**29. ಒಂದು ಪ್ರಾಧಿಕಾರದ ಅಥವಾ ಸಂಸ್ಥೆಯ ಸದಸ್ಯತ್ವಕ್ಕೆ ಅನರ್ಹತೆ.**- ವಿಶ್ವವಿದ್ಯಾಲಯದ ಸಂಸ್ಥೆಗಳ ಯಾವುವೇ ಪ್ರಾಧಿಕಾರದ ಒಬ್ಬ ವ್ಯಕ್ತಿಯು,-

(ಎ) ಅಸ್ವಸ್ಥ ಚಿತ್ತನಾಗಿದ್ದು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿಸಲ್ಪಟ್ಟಿದ್ದರೆ;

(ಬಿ) ಅವಿಮುಕ್ತ ದಿವಾಳಿಯಾಗಿದ್ದರೆ;

(ಸಿ) ನೈತಿಕ ಅಧ:ಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದರೆ;

(ಡಿ) ಖಾಸಗಿ ಬೋಧನಾ ತರಗತಿಗಳನ್ನು ನಡೆಸುತ್ತಿದ್ದರೆ ಅಥವಾ ಸ್ವತ: ನಿರತನಾಗಿದ್ದರೆ;

(ಇ) ಯಾವುದೇ ವಿಧದಲ್ಲಿ, ಎಲ್ಲಿಯೇ, ಯಾವುದೇ ಪರೀಕ್ಷೆಯನ್ನು ನಡೆಸುವಲ್ಲಿ ಅನುಚಿತ ಅಭ್ಯಾಸದಲ್ಲಿ ತೊಡಗಿದ್ದಕ್ಕಾಗಿ ಅಥವಾ ಉತ್ತೇಜಿಸಿದ್ದಕ್ಕಾಗಿ ದಂಡಿತನಾಗಿದ್ದರೆ;

(ಎಫ್) ಪ್ರಾಯೋಜಿತ ಸಂಸ್ಥೆಯು ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಯಾವೊಬ್ಬ ಸದಸ್ಯನನ್ನು ಆ ಪದವನ್ನು ಹೊಂದಿರುವುದಕ್ಕೆ ಅರ್ಹನಲ್ಲನೆಂದು ಲಿಖಿತದಲ್ಲಿ ಅಭಿಪ್ರಾಯ ನೀಡಿದಾಗಲೆಲ್ಲಾ,

-ಸದಸ್ಯನಾಗಿರುವುದಕ್ಕೆ ಅನರ್ಹನಾಗತಕ್ಕದ್ದು.

**30. ಖಾಲಿಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಕಾರ್ಯ ಅಥವಾ ವ್ಯವಹರಣೆಗಳು ಕೇವಲ ಅದರಲ್ಲಿ ಯಾವುದೇ ಖಾಲಿಸ್ಥಾನ ಇದೆ ಎಂಬ ಕಾರಣದಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣದಿಂದ ಮಾತ್ರವೇ ಅಸಿಂಧುವಾಗತಕ್ಕದ್ದಲ್ಲ.

**31. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು.–** (1) ಯಾವುವೇ ಕಾರ್ಯಸೂಚಿ ವಿಷಯಗಳನ್ನು ಕುಲಾಧಿಪತಿಯವರ ಪೂರ್ವಾನುಮೋದನೆಯನ್ನು ಪಡೆಯದೇ ಪ್ರಬಂಧಕ ಮಂಡಳಿಯ ಅಥವಾ ವ್ಯವಸ್ಥಾಪನಾ ಮಂಡಳಿಯ ಅಥವಾ ಯಾವುದೇ ಸಮಿತಿಯ ಸಭೆಗಳ ಕಾರ್ಯಸೂಚಿ ವಿಷಯಗಳಲ್ಲಿ ಸೇರಿಸತಕ್ಕದ್ದಲ್ಲ ಅಥವಾ ಚರ್ಚೆಗೆ ತೆಗೆದುಕೊಳ್ಳತಕ್ಕದ್ದಲ್ಲ ಮತ್ತು ತೀರ್ಮಾನಿಸತಕ್ಕದ್ದಲ್ಲ.

(2) ಈ ಅಧಿನಿಯಮದ ಯಾವುದೇ ಉಪಬಂಧಗಳನ್ನು ಪಾಲಿಸದೆ ಇರುವ ಸಂದರ್ಭದಲ್ಲಿ, ಕುಲಾಧಿಪತಿಯವರು ವಿಶ್ವವಿದ್ಯಾಲಯದ ಯಾವುದೇ ಪದಾಧಿಕಾರಿ ಅಥವಾ ಸಂಸ್ಥೆಯು ತೆಗೆದುಕೊಂಡ ಎಲ್ಲಾ ತೀರ್ಮಾನಗಳನ್ನು ವಿಪರ್ಯಯಗೊಳಿಸುವ ಮೂಲಕ ಪರಿಹಾರ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಅಧಿಕಾರವನ್ನು ಎಲ್ಲಾ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಅಂಥ ಪರಿಹಾರ ಕ್ರಮದ ಪರಿಣಾಮವಾಗಿ ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ವಿಶ್ವವಿದ್ಯಾಲಯದ ಪದಾಧಿಕಾರಿ ಅಥವಾ ಸಂಸ್ಥೆಯು ಕೈಗೊಂಡಿದ್ದ ಎಲ್ಲಾ ಅಂಥ ಕ್ರಮಗಳು, ಮೊದಲಿನಿಂದಲೂ ಶೂನ್ಯ ಮತ್ತು ಅಕೃತ ಎಂದು ಭಾವಿಸತಕ್ಕದ್ದು ಹಾಗೂ ತತ್ಪರಿಣಾಮವಾಗಿ, ಉಪಬಂಧ ಪಾಲಿಸದೇ ಇದ್ದ ವಿಷಯ ಅಥವಾ ನಿರ್ಧಾರದ ಸಂಬಂಧದಲ್ಲಿ ಅದಕ್ಕೆ ಮುಂಚೆ ಇದ್ದ ವಸ್ತುಸ್ಥಿತಿಯೇ ಮುಂದುವರಿಯತಕ್ಕದ್ದು.

## ಅಧ್ಯಾಯ – V

### ಪರಿನಿಯಮಗಳು ಮತ್ತು ವಿನಿಯಮಗಳು

**32. ಪರಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಪರಿನಿಯಮಗಳು ವಿಶ್ವವಿದ್ಯಾಲಯಕ್ಕೆ ಮತ್ತು ಸಿಬ್ಬಂದಿಗೆ ಸಂಬಂಧಿಸಿದ ಎಲ್ಲಾ ಅಥವಾ ಯಾವುದೇ ವಿಷಯಕ್ಕೆ ಈ ಕೆಳಗಿನಂತೆ ಉಪಬಂಧ ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಕಾರ್ಯಕಲಾಪಗಳನ್ನು ನಡೆಸುವ ಮತ್ತು ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸದಿರುವ ಸಂಸ್ಥೆಗಳ ರಚನೆಯ ಕಾರ್ಯವಿಧಾನ;

(ii) ಶಾಶ್ವತ ಶಾಸನಬದ್ಧ ದತ್ತಿ ನಿಧಿ, ವಿಶ್ವವಿದ್ಯಾಲಯ ದತ್ತಿ ನಿಧಿ, ಸಾಮಾನ್ಯ ನಿಧಿ ಹಾಗೂ ಅಭಿವೃದ್ಧಿ ನಿಧಿಗಳ ನಿರ್ವಹಣೆ;

(iii) ಕುಲಪತಿಗಳು, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರ ನೇಮಕಾತಿಯ ನಿಬಂಧನೆಗಳು ಹಾಗೂ ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಪ್ರಕಾರ್ಯಗಳು;

(iv) ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ, ಅಧ್ಯಾಪಕರ ಮತ್ತು ನೌಕರರ ನೇಮಕಾತಿ ವಿಧಾನ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(v) ವಿಶ್ವವಿದ್ಯಾಲಯ ಹಾಗೂ ಅದರ ಅಧಿಕಾರಿಗಳು, ವ್ಯಾಸಂಗ ವಿಭಾಗದ (ಫ್ಯಾಕಲ್ಟಿ) ಸದಸ್ಯರು, ನೌಕರರು ಹಾಗೂ ವಿದ್ಯಾರ್ಥಿಗಳ ನಡುವೆ ಉಂಟಾದ ವಿವಾದಗಳನ್ನು ಪರಿಹರಿಸುವ ಕಾರ್ಯವಿಧಾನ;

(vi) ವಿಭಾಗಗಳು ಮತ್ತು ವ್ಯಾಸಂಗ ವಿಭಾಗಗಳ (ಫ್ಯಾಕಲ್ಟಿಗಳ) ಸೃಜನೆ, ರದ್ದತಿ ಅಥವಾ ಪುನಾರಚನೆ;

(vii) ಇತರ ವಿಶ್ವವಿದ್ಯಾಲಯಗಳು ಅಥವಾ ಉನ್ನತ ಕಲಿಕಾ ಸಂಸ್ಥೆಗಳ ಜೊತೆಯಲ್ಲಿ ಸಹಕರಿಸಬೇಕಾದ ರೀತಿ;

(viii) ಗೌರವ ಪದವಿಗಳ ನೀಡಿಕೆಯ ಕಾರ್ಯವಿಧಾನ;

(ix) ಉಚಿತ ಶಿಕ್ಷಣ (ಫ್ರಿಶಿಪ್) ಮತ್ತು ವಿದ್ಯಾರ್ಥಿವೇತನ ಮಂಜೂರಾತಿಗೆ ಸಂಬಂಧಿಸಿದ ಉಪಬಂಧಗಳು;

(x) ವಿವಿಧ ವ್ಯಾಸಂಗ ಕ್ರಮಗಳಲ್ಲಿನ ಸೀಟುಗಳ ಸಂಖ್ಯೆಗೆ ಸಂಬಂಧಿಸಿದ ಕಾರ್ಯನೀತಿಗಳು ಮತ್ತು ಅಂಥ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಕಾರ್ಯವಿಧಾನ;

(xi) ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಶುಲ್ಕಕ್ಕೆ ಸಂಬಂಧಿಸಿದ ಕಾರ್ಯನೀತಿ;

(xii) ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಉಚಿತ ಶಿಕ್ಷಣ, ಪದಕಗಳು ಹಾಗೂ ಬಹುಮಾನಗಳನ್ನು ಪ್ರಾರಂಭಿಸುವುದು;

(xiii) ಪ್ರಬಂಧಕ ಮಂಡಳಿಯು ನಿರ್ಧರಿಸಬಹುದಾದ ಅಥವಾ ಈ ಅಧಿನಿಯಮದ ಅಡಿಯಲ್ಲಿ ಪರಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬೇಕಾದ ಅಗತ್ಯತೆಯುಳ್ಳ ಯಾವುದೇ ಇತರ ವಿಷಯಗಳು.

**33. ಪರಿನಿಯಮಗಳ ರಚನೆ ವಿಧಾನ.–** (1) ವ್ಯವಸ್ಥಾಪನಾ ಮಂಡಳಿಯು ರಚಿಸಿದ ಮೊದಲ ಶಾಸನಗಳನ್ನು ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ವ್ಯವಸ್ಥಾಪನಾ ಮಂಡಳಿಯು ಸಲ್ಲಿಸಿದ ಮೊದಲ ಪರಿನಿಯಮಗಳನ್ನು ಪ್ರಬಂಧಕ ಮಂಡಳಿಯು ಪರಿಗಣಿಸತಕ್ಕದ್ದು ಹಾಗೂ ತಾನು ಅವಶ್ಯವೆಂದು ಭಾವಿಸಬಹುದಾದ ಅಂಥ ಮಾರ್ಪಾಡುಗಳು, ಯಾವುದಾದರು ಇದ್ದಲ್ಲಿ, ಅವುಗಳೊಡನೆ ತನ್ನ ಅನುಮೋದನೆಯನ್ನು ನೀಡತಕ್ಕದ್ದು.

(3) ವಿಶ್ವವಿದ್ಯಾಲಯವು, ಪ್ರಬಂಧಕ ಮಂಡಳಿಯು ಅನುಮೋದಿಸಿದ ಮೊದಲ ಪರಿನಿಯಮಗಳನ್ನು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ಪ್ರಕಟಿಸತಕ್ಕದ್ದು ಮತ್ತು ತದನಂತರ ಮೊದಲ ಪರಿನಿಯಮಗಳ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**34. ಪರಿನಿಯಮಗಳ ತಿದ್ದುಪಡಿಯ ಅಧಿಕಾರ.–** ಪ್ರಬಂಧಕ ಮಂಡಳಿಯು ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸಬಹುದು ಅಥವಾ ಪರಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ಅವನ್ನು ನಿರಸನಗೊಳಿಸಬಹುದು.

**35. ವಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ವಿನಿಯಮಗಳು ಈ ಮುಂದಿನ ವಿಷಯಗಳಿಗೆ ಉಪಬಂಧಗಳನ್ನು ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ವಿದ್ಯಾರ್ಥಿ ಪಟ್ಟಿಯಲ್ಲಿ ಅವರುಗಳ ದಾಖಲಾತಿ ಹಾಗೂ ಮುಂದುವರಿಕೆ;

(ii) ವಿಶ್ವವಿದ್ಯಾಲಯದ ಎಲ್ಲಾ ಪದವಿಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ನಿಗದಿಪಡಿಸತಕ್ಕ ವ್ಯಾಸಂಗ ಕ್ರಮಗಳು;

(iii) ಪದವಿಗಳ ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರದಾನ;

(iv) ಸಂಶೋಧನಾ ವೇತನಗಳು (ಫೆಲೋಶಿಪ್), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಪದಕಗಳು ಮತ್ತು ಬಹುಮಾನಗಳನ್ನು ನೀಡಲು ಷರತ್ತುಗಳು;

(v) ಪರೀಕ್ಷೆಗಳನ್ನು ನಡೆಸುವುದು ಹಾಗೂ ಪರೀಕ್ಷೆ ನಡೆಸುವ ಸಂಸ್ಥೆಗಳು, ಪರೀಕ್ಷಕರು, ಪರೀಕ್ಷಾ ಮೇಲ್ವಿಚಾರಕರು, ಟ್ಯಾಬುಲೇಟರ್‌ಗಳು ಮತ್ತು ಮಾಡರೇಟರ್‌ಗಳ ನೇಮಕಾತಿ ಷರತ್ತುಗಳು ಮತ್ತು ವಿಧಾನ ಹಾಗೂ ಅವರ ಕರ್ತವ್ಯಗಳು;

(vi) ವಿಶ್ವವಿದ್ಯಾಲಯದ ಪರೀಕ್ಷೆಗಳ, ಪದವಿಗಳ ಹಾಗೂ ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರವೇಶಕ್ಕೆ ವಿಧಿಸತಕ್ಕ ಶುಲ್ಕ;

(vii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನಲ್ಲಿ ವಿದ್ಯಾರ್ಥಿಗಳ ನಿವಾಸಕ್ಕಾಗಿ ಷರತ್ತುಗಳು;

(viii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಶಿಸ್ತು ಪಾಲನೆ;

(ix) ಈ ಅಧಿನಿಯಮದ ಅಡಿಯಲ್ಲಿನ ಪರಿನಿಯಮಗಳಲ್ಲಿ ಉಪಬಂಧ ಕಲ್ಪಿಸಬಹುದಾಂಥ ಇತರ ಎಲ್ಲಾ ವಿಷಯಗಳು.

**36. ವಿನಿಯಮಗಳ ರಚನೆ ವಿಧಾನ.–** ವಿನಿಯಮಗಳನ್ನು ಶೈಕ್ಷಣಿಕ ಪರಿಷತ್ತು ರಚಿಸತಕ್ಕದ್ದು ಹಾಗೂ ವ್ಯವಸ್ಥಾಪನಾ ಮಂಡಳಿಯು ಅನುಮೋದಿಸತಕ್ಕದ್ದು.

**37. ವಿನಿಯಮಗಳ ತಿದ್ದುಪಡಿಗೆ ಅಧಿಕಾರ.–** ವ್ಯವಸ್ಥಾಪನಾ ಮಂಡಳಿಯ ಅನುಮೋದನೆಯೊಡನೆ ಶೈಕ್ಷಣಿಕ ಪರಿಷತ್ತು ಹೊಸ ವಿನಿಯಮಗಳನ್ನು ಅಥವಾ ಹೆಚ್ಚುವರಿ ವಿನಿಯಮಗಳನ್ನು ರಚಿಸಬಹುದು ಅಥವಾ ವಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ನಿರಸನಗೊಳಿಸಬಹುದು.

**38. ಶುಲ್ಕ ನಿಯಂತ್ರಣ ಸಮಿತಿ.–** (1) (1) ಸರ್ಕಾರವು ರಚಿಸಿದ ನಿವೃತ್ತ ಸರ್ವೋಚ್ಚ ನ್ಯಾಯಾಲಯದ ಅಥವಾ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು ಮುಖ್ಯಸ್ಥರಾಗಿರುವ ಮತ್ತು ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ, ಉನ್ನತ ಶಿಕ್ಷಣ ಪ್ರಭಾರದಲ್ಲಿರುವ ಸರ್ಕಾರದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು, ವೈದ್ಯಕೀಯ ಶಿಕ್ಷಣದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು ಒಬ್ಬ ಮಹಿಳೆಯು ಸೇರಿದಂತೆ ಪ್ರಬಂಧಕ ಮಂಡಳಿಯು ನಾಮನಿರ್ದೇಶಿಸಿದ ಇಬ್ಬರು ಶಿಕ್ಷಣ ತಜ್ಞರು ಇವರುಗಳನ್ನು ಒಳಗೊಂಡ ಒಂದು ಶುಲ್ಕ ನಿಯಂತ್ರಣ ಸಮಿತಿಯು, 9ನೇ ಪ್ರಕರಣದ ಅಡಿಯಲ್ಲಿ ಕರ್ನಾಟಕದ ವಿದ್ಯಾರ್ಥಿಗಳಿಗಾಗಿ ಮೀಸಲಿರಿಸಿದ ವಿಶ್ವವಿದ್ಯಾಲಯದ

ಸ್ಥಾನಗಳ ಶುಲ್ಕವನ್ನು ನಿಯಂತ್ರಿಸತಕ್ಕದ್ದು. ಸಮಿತಿಯಲ್ಲಿ ಈ ಉದ್ದೇಶಕ್ಕಾಗಿ ಒಬ್ಬರು ಖ್ಯಾತ ಚಾರ್ಟರ್ಡ್ ಅಕೌಂಟೆಂಟ್ ರವರನ್ನು ಸಹ ಸದಸ್ಯನನ್ನಾಗಿ ಸೇರಿಸಿಕೊಳ್ಳತಕ್ಕದ್ದು.

(2) ಸಮಿತಿಯು ವಿಶ್ವವಿದ್ಯಾಲಯದ ಪ್ರವೇಶಗಳ ಮತ್ತು ಶುಲ್ಕದ ಸಂಗ್ರಹಣೆಯ ಅನುಪಾಲನೆಯನ್ನು ನೋಡಿಕೊಳ್ಳತಕ್ಕದ್ದು.

## ಅಧ್ಯಾಯ – VI

### ಸಂಕೀರ್ಣ

**39. ನೌಕರರ ಸೇವಾ ಷರತ್ತುಗಳು.–** (1) ಪರಿನಿಯಮಗಳ ಮತ್ತು ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಥವಾ ನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳು, ಯಾವುದಾದರೂ ಇದ್ದಲ್ಲಿ, ಅವುಗಳಿಗೆ ಒಳಪಟ್ಟು ಪ್ರತಿಯೊಬ್ಬ ನೌಕರನು ಲಿಖಿತ ಕರಾರಿನ ಅಡಿಯಲ್ಲಿ ನೇಮಕಗೊಳ್ಳತಕ್ಕದ್ದು ಮತ್ತು ಅದನ್ನು ವಿಶ್ವವಿದ್ಯಾಲಯದಲ್ಲಿ ಇಟ್ಟುಕೊಳ್ಳತಕ್ಕದ್ದು ಹಾಗೂ ಅದರ ಪ್ರತಿಯನ್ನು ಸಂಬಂಧಪಟ್ಟ ನೌಕರನಿಗೆ ನೀಡತಕ್ಕದ್ದು.

(2) ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಕಾರ್ಯವಿಧಾನಗಳ ಮೂಲಕ ನಿಯಂತ್ರಿಸತಕ್ಕದ್ದು.

(3) ಕರಾರಿನಿಂದಾಗಿ ವಿಶ್ವವಿದ್ಯಾಲಯ ಮತ್ತು ನೌಕರನ ಮಧ್ಯದಲ್ಲಿ ಉದ್ಭವಿಸಬಹುದಾದ ಯಾವುದೇ ವಿವಾದವನ್ನು, ಲಿಖಿತ ಕರಾರಿನಲ್ಲಿ ಉಪಬಂಧಿಸಿದ ವಿಧಾನದಲ್ಲಿ ಹಾಗೂ ಪರಿನಿಯಮಗಳ ಅನುಸಾರವಾಗಿ ಪರಿಹರಿಸತಕ್ಕದ್ದು.

**40. ಮೇಲ್ಮನವಿ ಹಕ್ಕು.–** ವಿಶ್ವವಿದ್ಯಾಲಯವು ತನ್ನ ನೌಕರರ ಅಥವಾ ವಿದ್ಯಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡ ಸಂದರ್ಭದಲ್ಲಿ, ಬಾಧಿತ ನೌಕರ ಅಥವಾ ವಿದ್ಯಾರ್ಥಿಗಳು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಮೇಲ್ಮನವಿ ಹಕ್ಕನ್ನು ಹೊಂದಿರತಕ್ಕದ್ದು.

**41. ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿ.–** ವಿಶ್ವವಿದ್ಯಾಲಯವು, ತನ್ನ ನೌಕರರ ಪ್ರಯೋಜನಕ್ಕಾಗಿ, ಪರಿನಿಯಮಗಳು ಮತ್ತು ಜಾರಿಯಲ್ಲಿರುವ ಕಾನೂನುಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿಯನ್ನು ರಚಿಸತಕ್ಕದ್ದು ಹಾಗೂ ಅಂಥ ವಿಮಾ ಯೋಜನೆಗಳನ್ನು ಒದಗಿಸತಕ್ಕದ್ದು.

**42. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಇತರ ಸಂಸ್ಥೆಯ ಸದಸ್ಯನಾಗಿ ಯಾವೊಬ್ಬ ವ್ಯಕ್ತಿಯು ಸೂಕ್ತವಾಗಿ ಆಯ್ಕೆಯಾಗಿದ್ದಾನೆಯೇ ಅಥವಾ ನೇಮಕಗೊಂಡಿದ್ದಾನೆಯೇ ಅಥವಾ ಅದಕ್ಕೆ ಅರ್ಹನಾಗಿದ್ದಾನೆಯೇ ಎಂಬ ಯಾವುದೇ ಪ್ರಶ್ನೆ ಉದ್ಭವಿಸಿದರೆ, ಆ ವಿಷಯವನ್ನು ತೀರ್ಮಾನಕ್ಕಾಗಿ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**43. ಸಮಿತಿಗಳ ರಚನೆ.–** 22ನೇ ಪ್ರಕರಣದಲ್ಲಿ ನಮೂದಿಸಿದ ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಅಧಿಕಾರವನ್ನು ಹೊಂದಿರುವ ಅಂಥ ಸದಸ್ಯರನ್ನು ಒಳಗೊಂಡ ಅಂಥ ಪ್ರಾಧಿಕಾರದ ಒಂದು ಸಮಿತಿಯನ್ನು ರಚಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**44. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಂಸ್ಥೆಯ ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ಪೈಕಿ ಯಾವುದೇ ಸ್ಥಾನವು ಆಕಸ್ಮಿಕವಾಗಿ ಖಾಲಿಯಾದರೆ, ಯಾರ ಸ್ಥಾನವು ಖಾಲಿಯಾಗಿ ತುಂಬಬೇಕಾಗಿ ಬಂದಿದೆಯೋ ಆ ಸದಸ್ಯನನ್ನು ಯಾವ ರೀತಿಯಲ್ಲಿ ಆರಿಸಲಾಗಿತ್ತೋ ಅದೇ ರೀತಿಯಲ್ಲಿ ಹೊಸ ಸದಸ್ಯನನ್ನು ಆರಿಸಿ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ಖಾಲಿ ಸ್ಥಾನವನ್ನು ಭರ್ತಿ ಮಾಡಿದ ವ್ಯಕ್ತಿಯು ಆತನು ಯಾವ ಸದಸ್ಯನ ಸ್ಥಾನದಲ್ಲಿ ಭರ್ತಿಯಾಗಿರುವನೋ ಆ ಸದಸ್ಯನು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯನಾಗಿ ಉಳಿಯುತ್ತಿದ್ದ ಬಾಕಿ ಅವಧಿಯವರೆಗೆ ಮಾತ್ರ ಸದಸ್ಯನಾಗಿರತಕ್ಕದ್ದು.

**45. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.–** ಈ ಅಧಿನಿಯಮ ಅಥವಾ ಪರಿನಿಯಮಗಳು ಅಥವಾ ನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ವಿಶ್ವವಿದ್ಯಾಲಯದ ಯಾವೊಬ್ಬ ಅಧಿಕಾರಿ ಅಥವಾ ಇತರ ನೌಕರರ ವಿರುದ್ಧ ಯಾವುದೇ ದಾವೆ ಅಥವಾ ಇತರ ಕಾನೂನು ವ್ಯವಹರಣೆಗಳನ್ನು ನಡೆಸಲು ಅವಕಾಶ ಇರತಕ್ಕದ್ದಲ್ಲ.

**46. ತಾತ್ಕಾಲಿಕ ಉಪಬಂಧಗಳು.–** ಈ ಅಧಿನಿಯಮ ಮತ್ತು ಪರಿನಿಯಮಗಳ ಯಾವುದೇ ಇತರ ಉಪಬಂಧಗಳಲ್ಲಿ ಏನೇ ಇದ್ದರೂ,–

(i) ಮೊದಲ ಕುಲಪತಿ ಮತ್ತು ಸಹಕುಲಪತಿ, ಯಾರಾದರೂ ಇದ್ದರೆ, ಅವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(ii) ಮೊದಲ ಕುಲಸಚಿವರನ್ನು ಮತ್ತು ಮೊದಲ ಹಣಕಾಸು ಅಧಿಕಾರಿಯವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು; ಮತ್ತು

(iii) ಮೊದಲ ವ್ಯವಸ್ಥಾಪನ ಮಂಡಳಿ, ಮೊದಲ ಹಣಕಾಸು ಸಮಿತಿ, ಮೊದಲ ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಹಾಗೂ ಮೊದಲ ಶೈಕ್ಷಣಿಕ ಪರಿಷತ್ತನ್ನು ಕುಲಾಧಿಪತಿಯವರು ರಚಿಸತಕ್ಕದ್ದು.

**47. ಶಾಶ್ವತ ಶಾಸನಬದ್ಧ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಕನಿಷ್ಠ ಇಪ್ಪತ್ತೈದು ಕೋಟಿ ರೂಪಾಯಿಗಳನ್ನುಳ್ಳ ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು ಇದರ ಪೈಕಿ ಕನಿಷ್ಠ ಹದಿನೈದು ಕೋಟಿ ರೂಪಾಯಿಗಳು ನಗದು ರೂಪದಲ್ಲಿ ಮತ್ತು ಇನ್ನುಳಿದದ್ದು ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ಇರತಕ್ಕದ್ದು ಮತ್ತು ಇದನ್ನು ತಾನಾಗಿಯೆ ಹೆಚ್ಚಿಸಬಹುದಾಗಿದ್ದು ಆದರೆ ಕಡಿಮೆ ಮಾಡತಕ್ಕದ್ದಲ್ಲ:

ಪರಂತು, ಬೆಂಗಳೂರು ಅಥವಾ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊರಗಿರುವ ವಿಶ್ವವಿದ್ಯಾಲಯದ ಸಂದರ್ಭದಲ್ಲಿ ಕನಿಷ್ಠ ಹತ್ತು ಕೋಟಿ ರೂಪಾಯಿಗಳು ನಗದು ರೂಪದಲ್ಲಿರತಕ್ಕದ್ದು ಮತ್ತು ಉಳಿದ ಐದು ಕೋಟಿ ರೂಪಾಯಿಗಳು ಬ್ಯಾಂಕ್ ಗ್ಯಾರಂಟಿಯ ರೂಪದಲ್ಲಿರತಕ್ಕದ್ದು.

(2) ವಿಶ್ವವಿದ್ಯಾಲಯವು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಹಣವನ್ನು ಹೂಡಲು ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯವು ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಗೆ ವರ್ಗಾವಣೆ ಮಾಡಬಹುದು. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನೂ ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(4) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಿದ ವರಮಾನದ ಶೇಕಡಾ ಎಪ್ಪತ್ತೈದರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತೈದರಷ್ಟನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಯಲ್ಲಿ ಪುನ: ತೊಡಗಿಸತಕ್ಕದ್ದು.

**48. ವಿಶ್ವವಿದ್ಯಾಲಯದ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ನಿಧಿಗಳನ್ನು ಒಳಗೊಂಡ ವಿಶ್ವವಿದ್ಯಾಲಯದ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದು ಕಾಲಕಾಲಕ್ಕೆ ಸ್ವೀಕರಿಸಬಹುದಾದ ದೇಣಿಗೆಗಳು ಮತ್ತು ಇತರ ನಿಧಿಗಳನ್ನು ಒಳಗೊಂಡಿರತಕ್ಕದ್ದು.

(2) ವಿಶ್ವವಿದ್ಯಾಲಯವು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ವಿಶ್ವವಿದ್ಯಾಲಯದ ದತ್ತಿನಿಧಿಯನ್ನು ಹೂಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯ ದತ್ತಿ ನಿಧಿಯು, ವಿಶ್ವವಿದ್ಯಾಲಯವು ತನ್ನ ಸಾಮಾಜಿಕ ಧ್ಯೇಯೋದ್ದೇಶಗಳನ್ನು ನೆರವೇರಿಸುವ ಸಂದರ್ಭದಲ್ಲಿ ಮತ್ತು/ಅಥವಾ ಮುಂಗಾಣದ ಸನ್ನಿವೇಶದಲ್ಲಿ ಉದ್ಭವಿಸಬಹುದಾದ ಹಣಕಾಸು ಸವಾಲುಗಳಿಂದ ತನ್ನನ್ನು ರಕ್ಷಿಸಿಕೊಳ್ಳುವುದಕ್ಕಾಗಿ, ಸ್ವಇಚ್ಛೆಯಿಂದ ನಿರ್ವಹಿಸಿಕೊಂಡು ಬರಲು ಮತ್ತು ಜವಾಬ್ದಾರಿಯಿಂದ ಹಣ ಹೂಡಿಕೆ ಮಾಡಲು ಇಚ್ಛೆಯುಳ್ಳವರಾಗಿ ಸ್ವಯಂ ವಿಧಿಸಿಕೊಂಡ ನಿಧಿಯಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಗೆ ವರ್ಗಾಯಿಸಬಹುದು. ವಿಶ್ವವಿದ್ಯಾಲಯದ ಸಮಾಪಣೆಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನು ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(5) ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಬರುವ ವರಮಾನದ ಶೇಕಡಾ ಎಂಭತ್ತರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸದ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತರಷ್ಟನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**49. ಸಾಮಾನ್ಯ ನಿಧಿ.**– (1) ವಿಶ್ವವಿದ್ಯಾಲಯವು, ಒಂದು ಸಾಮಾನ್ಯ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯವು ವಿಧಿಸಬಹುದಾದ ಎಲ್ಲಾ ಶುಲ್ಕಗಳು;

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವುದೇ ಇತರ ಮೂಲದಿಂದ ಸ್ವೀಕರಿಸಲಾದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ದೇಣಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು;

(2) ಸಾಮಾನ್ಯ ನಿಧಿಗೆ ಜಮಾ ಮಾಡುವ ನಿಧಿಗಳನ್ನು ವಿಶ್ವವಿದ್ಯಾಲಯದ ಎಲ್ಲಾ ಆವರ್ತಕ ವೆಚ್ಚಗಳನ್ನು ಭರಿಸಲು ಉಪಯೋಗಿಸಕೊಳ್ಳತಕ್ಕದ್ದು.

**50. ಅಭಿವೃದ್ಧಿ ನಿಧಿ.**– (1) ವಿಶ್ವವಿದ್ಯಾಲಯವು, ಒಂದು ಅಭಿವೃದ್ಧಿ ನಿಧಿಯನ್ನು ಸಹ ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:-

(i) ವಿದ್ಯಾರ್ಥಿಗಳಿಂದ ವಿಧಿಸಬಹುದಾದ ಅಭಿವೃದ್ಧಿ ಶುಲ್ಕಗಳು;

(ii) ವಿಶ್ವವಿದ್ಯಾಲಯದ ಅಭಿವೃದ್ಧಿಯ ಉದ್ದೇಶಗಳಿಗಾಗಿ ಯಾವುದೇ ಇತರ ಮೂಲಗಳಿಂದ ಸ್ವೀಕರಿಸಿದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ವಂತಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು; ಮತ್ತು

(v) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಲಾದ ಎಲ್ಲಾ ವರಮಾನಗಳು.

(2) ಅಭಿವೃದ್ಧಿ ನಿಧಿಗೆ ಕಾಲಕಾಲಕ್ಕೆ ಜಮಾ ಮಾಡಿದ ನಿಧಿಯನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಉಪಯೋಗಿಸಕೊಳ್ಳತಕ್ಕದ್ದು.

**51. ನಿಧಿಗಳ ನಿರ್ವಹಣೆ.**– 47, 48, 49 ಮತ್ತು 50ನೇ ಪ್ರಕರಣಗಳಡಿಯಲ್ಲಿ ಸ್ಥಾಪಿಸಲಾದ ನಿಧಿಗಳನ್ನು ಪ್ರಬಂಧಕ ಮಂಡಳಿಯ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ನಿಯಂತ್ರಿಸತಕ್ಕದ್ದು ಹಾಗೂ ನಿರ್ವಹಿಸತಕ್ಕದ್ದು.

**52. ವಾರ್ಷಿಕ ವರದಿ.**– (1) ವಿಶ್ವವಿದ್ಯಾಲಯದ ವಾರ್ಷಿಕ ವರದಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ಅದರ ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಪ್ರಬಂಧಕ ಮಂಡಳಿಯು ವಾರ್ಷಿಕ ವರದಿಯನ್ನು ತನ್ನ ಸಭೆಯಲ್ಲಿ ಪರಿಗಣಿಸತಕ್ಕದ್ದು ಹಾಗೂ ಅದನ್ನು ಮಾರ್ಪಾಡುಗಳೊಡನೆ ಅಥವಾ ಮಾರ್ಪಾಡುಗಳಿಲ್ಲದೆ ಅನುಮೋದಿಸಬಹುದು.

(3) ಪ್ರಬಂಧಕ ಮಂಡಳಿಯು ಸೂಕ್ತವಾಗಿ ಅನುಮೋದಿಸಿದ ವಾರ್ಷಿಕ ವರದಿಯ ಒಂದು ಪ್ರತಿಯನ್ನು ಪ್ರತಿವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ಡಿಸೆಂಬರ್ 31ಕ್ಕೆ ಮೊದಲು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**53. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.**– (1) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕ ಪತ್ರ ಮತ್ತು ಜಮಾ ಖರ್ಚು ಪಟ್ಟಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯಕ್ಕೆ ಎಲ್ಲಾ ಮೂಲಗಳಿಂದ ಪ್ರಾಪ್ತವಾಗುವ ಅಥವಾ ಸ್ವೀಕರಿಸಲಾಗುವ ಎಲ್ಲಾ ನಿಧಿಗಳು ಹಾಗೂ ವಿತರಿಸಿದ ಅಥವಾ ಸಂದಾಯ ಮಾಡಿದ ಎಲ್ಲಾ ಮೊಬಲಗುಗಳನ್ನು ವಿಶ್ವವಿದ್ಯಾಲಯವು ನಿರ್ವಹಿಸುವ ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕಪತ್ರಗಳನ್ನು ಪ್ರತಿ ವರ್ಷವೂ ಭಾರತದ ಚಾರ್ಟೆಡ್ ಅಕೌಟೆಂಟ್‌ಗಳ ಸಂಸ್ಥೆಯ ಸದಸ್ಯರಾಗಿರುವ ಒಬ್ಬ ಲೆಕ್ಕಪರಿಶೋಧಕರಿಂದ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಲೆಕ್ಕಪರಿಶೋಧನಾ ವರದಿಯೊಡನೆ, ಪ್ರತಿ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ನವೆಂಬರ್ 30ಕ್ಕೆ ಮೊದಲು ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(4) ವಾರ್ಷಿಕ ಲೆಕ್ಕಪತ್ರಗಳು, ಜಮಾಖರ್ಚು ಪಟ್ಟಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಪ್ರಬಂಧಕ ಮಂಡಳಿಯು ತನ್ನ ಸಭೆಯಲ್ಲಿ ಪರ್ಯಾಲೋಚಿಸತಕ್ಕದ್ದು ಮತ್ತು ಪ್ರಬಂಧಕ ಮಂಡಳಿಯು ಅದನ್ನು ತನ್ನ ಅಭಿಪ್ರಾಯಗಳೊಡನೆ ಸಂದರ್ಶಕರಿಗೆ ಹಾಗೂ ಸರ್ಕಾರಕ್ಕೆ ಪ್ರತಿ ವರ್ಷದ ಡಿಸೆಂಬರ್ 31ಕ್ಕೆ ಮೊದಲು ಕಳುಹಿಸತಕ್ಕದ್ದು.

**54. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಮಿತಿಯ ಯಾವುದೇ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ ಅಥವಾ ಗೊತ್ತುವಳಿಯು ಅಥವಾ ವಿಶ್ವವಿದ್ಯಾಲಯದ ಸ್ವಾಧೀನದಲ್ಲಿರುವ ಇತರ ದಾಖಲೆಗಳು ಅಥವಾ ವಿಶ್ವವಿದ್ಯಾಲಯವು ಯುಕ್ತವಾಗಿ ನಿರ್ವಹಿಸುವ ಯಾವುದೇ ರಿಜಿಸ್ಟರ್‌ನಲ್ಲಿಯ ಯಾವುದೇ ನಮೂದುಗಳ ಪ್ರತಿಯನ್ನು, ಅದರ ಮೇಲೆ ಕುಲಸಚಿವರು ಪ್ರಮಾಣೀಕರಿಸಿದ್ದರೆ, ಅದನ್ನು ಅಂಥ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ, ಗೊತ್ತುವಳಿ ಅಥವಾ ದಾಖಲೆ ಅಥವಾ ರಿಜಿಸ್ಟರ್‌ನಲ್ಲಿ ಇರುವ ನಮೂದನ್ನು ಮೇಲ್ನೋಟದ ಸಾಕ್ಷ್ಯವೆಂಬುದಾಗಿ ಸ್ವೀಕರಿಸತಕ್ಕದ್ದು ಮತ್ತು ವಿಷಯಗಳ ಸಾಕ್ಷಿಯಾಗಿ ಅಂಗೀಕರಿಸತಕ್ಕದ್ದು ಹಾಗೂ ಮೂಲ ದಾಖಲೆಗಳನ್ನೇ ಸಲ್ಲಿಸಿದ್ದರೆ ಅದನ್ನು, ದಾಖಲಿಸಿರುವ ವಿಷಯಗಳು ಮತ್ತು ವಹಿವಾಟುಗಳ ಸಾಕ್ಷ್ಯವಾಗಿ ಅಂಗೀಕರಿಸಲಾಗುತ್ತಿತ್ತೋ, ಅದೇ ರೀತಿಯಲ್ಲಿ ಇವನ್ನೂ ಸಾಕ್ಷ್ಯವಾಗಿ ಅಂಗೀಕರಿಸತಕ್ಕದ್ದು.

**55. ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ.–** ರಾಜ್ಯಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಥವಾ ಅದರಲ್ಲಿ ಇರುವ ಯಾವುವೇ ಉಪಬಂಧಗಳನ್ನು ಅಥವಾ ಅದರಡಿಯಲ್ಲಿ ರಚಿಸಿದ ಯಾವುವೇ ನಿಯಮಗಳು ಅಥವಾ ಆದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿರ್ದೇಶನ ನೀಡುವುದು ಅವಶ್ಯವೆಂದು ಅಥವಾ ಉಚಿತವೆಂದು ಅಭಿಪ್ರಾಯಪಟ್ಟಲ್ಲಿ ಅದು ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ ಅಥವಾ ಸಂದರ್ಭಾನುಸಾರವಾಗಿ ವ್ಯವಸ್ಥಾಪನಾ ಮಂಡಳಿಯು ಅಂಥ ಪ್ರತಿಯೊಂದು ನಿರ್ದೇಶನವನ್ನು ಪಾಲಿಸತಕ್ಕದ್ದು.

**56. ದಂಡಗಳು.–** (1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿತವಾದ ನಿಯಮಗಳು ಉಪಬಂಧಗಳನ್ನು ಅಥವಾ ಯಾವುದೇ ಪರೀಕ್ಷಾ ವಿಷಯಗಳನ್ನು ಅಥವಾ ಪದವಿಗಳನ್ನು ನೀಡುವುದಕ್ಕೆ ಅಥವಾ ಅಂಕಪಟ್ಟಿಗಳನ್ನು ನೀಡುವುದಕ್ಕೆ ಸಂಬಂಧಪಟ್ಟ ವಿಷಯಗಳಲ್ಲಿ ಉಲ್ಲಂಘನೆಗಳನ್ನು ಮಾಡುವ ಯಾವೊಬ್ಬ ವ್ಯಕ್ತಿಯು, ಅಪರಾಧ ನಿರ್ಣಯವಾದ ಮೇಲೆ, ಐವತ್ತು ಸಾವಿರ ರೂಪಾಯಿಗಳಿಗೆ ಕಡಿಮೆಯಲ್ಲದ ಆದರೆ ಹತ್ತು ಲಕ್ಷ ರೂಪಾಯಿಗಳ ವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಆರು ತಿಂಗಳ ಅವಧಿಗಿಂತ ಕಡಿಮೆಯಲ್ಲದ ಆದರೆ ಎರಡು ವರ್ಷಗಳ ಅವಧಿಯವರೆಗೆ ವಿಸ್ತರಿಸಬಹುದಾದ ಕಾರಾವಾಸದಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು:

ಪರಂತು, ವಿಶ್ವವಿದ್ಯಾಲಯವೂ ಸಹ ಒಳಗೊಂಡಿರುವಲ್ಲಿ, ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಈ ಅಧಿನಿಯಮದ ಅಡಿಯಲ್ಲಿ ನೀಡಲಾದ ಅನುಮತಿ ಪತ್ರವನ್ನು ಹಿಂತೆಗೆದುಕೊಳ್ಳತಕ್ಕದ್ದು.

(2) ಈ ಪ್ರಕರಣದ ಅಡಿಯಲ್ಲಿನ ದಂಡವನ್ನು ಇತರ ಯಾವುದೇ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಲಾದ ದಂಡಕ್ಕೆ ಬಾಧಕವಾಗದಂತೆ ವಿಧಿಸಬಹುದು.

**57. ಪ್ರವೇಶಿಸುವ ಮತ್ತು ಪರಿಶೋಧಿಸುವ ಅಧಿಕಾರ.–** ಈ ಉದ್ದೇಶಕ್ಕಾಗಿ, ರಾಜ್ಯಸರ್ಕಾರದಿಂದ ಪ್ರಾಧಿಕೃತಗೊಂಡ 'ಎ' ಸಮೂಹದ ಅಧಿಕಾರಿ ದರ್ಜೆಗಿಂತ ಕಡಿಮೆಇಲ್ಲದ ದರ್ಜೆಯ ಯಾವೊಬ್ಬ ಅಧಿಕಾರಿಯು, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಶನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ 37) ಅಡಿಯಲ್ಲಿ ನಿರ್ದಿಷ್ಟಪಡಿಸಿರಬಹುದಾದ ಅಂಥ ಷರತ್ತುಗಳಿಗೆ ಒಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ, ಆ ಅಧಿನಿಯಮದ 9ನೇ ಪ್ರಕರಣದ ಅಡಿಯಲ್ಲಿ ಉಪಬಂಧಿಸಲಾದಂತಹವೇ ಅಧಿಕಾರಗಳನ್ನು ಚಲಾಯಿಸಲು ಮತ್ತು ಪ್ರಕಾರ್ಯಗಳನ್ನು ನೆರವೇರಿಸಲು ಅಧಿಕೃತನಾದ ಅಧಿಕಾರಿ ಎಂಬುದಾಗಿ ಭಾವಿಸತಕ್ಕದ್ದು.

**58. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ನಿರ್ದೇಶನವನ್ನು ನೀಡುವ ಅಧಿಕಾರ.–** (1) ವಿಶ್ವವಿದ್ಯಾಲಯವು ತನ್ನ ರಚನೆ ಅಥವಾ ನಿಗಮನವನ್ನು ನಿಯಂತ್ರಿಸುವ ಕಾನೂನಿಗೆ ಅನುಸಾರವಾಗಿ ತನ್ನ ಸಮಾಪನವನ್ನು ಉದ್ದೇಶಿಸಿದ್ದಲ್ಲಿ, ಅದು ಕನಿಷ್ಠ ಆರು ತಿಂಗಳ ಲಿಖಿತ ಪೂರ್ವ ಸೂಚನೆಯನ್ನು (ನೋಟಿಸು) ಸರ್ಕಾರಕ್ಕೆ ನೀಡತಕ್ಕದ್ದು.

(2) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಈ ಕೆಳಗಿನವುಗಳ ಬಗ್ಗೆ, ಎಂದರೆ:–

(i) ಪದವಿಯನ್ನು ನೀಡುವುದಕ್ಕಾಗಿ ಬೋಧನೆಯ ಗುಣಮಟ್ಟ;

(ii) ಶಿಕ್ಷಣದ ಗುಣಮಟ್ಟ;

(iii) ಉನ್ನತ ಶಿಕ್ಷಣದ ವ್ಯಾಪಾರೀಕರಣವನ್ನು ತಡೆಗಟ್ಟುವುದು;

(iv) ಅಧಿನಿಯಮದ ಉಪಬಂಧಗಳ ಉಲ್ಲಂಘನೆಯ ಬಗ್ಗೆ, ಯಾವುದಾದರೂ ಇದ್ದಲ್ಲಿ,

– ಇವುಗಳ ಬಗ್ಗೆ ನಿಯತಕಾಲಿಕ ಪರಿವೀಕ್ಷಣೆಯನ್ನು ನಡೆಸತಕ್ಕದ್ದು ಮತ್ತು ಸರ್ಕಾರಕ್ಕೆ ವರದಿಯನ್ನು ಕಳುಹಿಸತಕ್ಕದ್ದು.

(3) ದುರ್ವ್ಯವಹರಣೆ, ದುರಾಡಳಿತ ಮತ್ತು ಅಶಿಸ್ತು ಆಗಿದೆ ಎಂಬುದನ್ನು ಗುರುತಿಸಿದರೆ, ಸರ್ಕಾರವು, ವಿಶ್ವವಿದ್ಯಾಲಯದ ಆಡಳಿತವರ್ಗದವರಿಗೆ ಆಡಳಿತವನ್ನು ಸರಿಪಡಿಸಬೇಕೆಂದು ನಿರ್ದೇಶನಗಳನ್ನು ನೀಡತಕ್ಕದ್ದು. ನಿಯಮಿಸಬಹುದಾದ ಅಂಥ ಅವಧಿಯೊಳಗೆ ಆ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುವ ಹಕ್ಕು ಸರ್ಕಾರದಲ್ಲಿ ನಿಹಿತವಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ವಿಧಾನವು, ಸರ್ಕಾರವು ಈ ಸಂಬಂಧದಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು:

ಪರಂತು, ವಿಶ್ವವಿದ್ಯಾಲಯವು ತನ್ನ ಕಾರಣಗಳನ್ನು ಹೇಳಿಕೊಳ್ಳಲು ಸಮಂಜಸ ಅವಕಾಶಗಳನ್ನು ನೀಡಿದ ಹೊರತು ಅಂಥ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

(5) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೋಟಿಸನ್ನು ಸ್ವೀಕರಿಸಿದ ಮೇಲೆ, ಸರ್ಕಾರವು ಸಂಬಂಧಿಸಿದ ನಿಯಂತ್ರಣಾ ಪ್ರಾಧಿಕಾರದೊಡನೆ ಸಮಾಲೋಚಿಸಿ, ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ಅಥವಾ ವ್ಯಾಸಂಗ ಕ್ರಮವನ್ನು ಪರಿಸಮಾಪನಗೊಳಿಸಲು ಉದ್ದೇಶಿಸಿದ ದಿನಾಂಕದಿಂದ, ವಿಶ್ವವಿದ್ಯಾಲಯದಲ್ಲಿ ನಿಯತ ವ್ಯಾಸಂಗ ಕ್ರಮಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕೊನೆಯ ತಂಡ (ಬ್ಯಾಚ್) ತನ್ನ ವ್ಯಾಸಂಗ ಕ್ರಮವನ್ನು ಮುಗಿಸುವವರೆಗೆ ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು.

**59. ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು.**– (1) 58ನೇ ಪ್ರಕರಣದ (5)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ಅದರ ಆಡಳಿತಾತ್ಮಕ ವೆಚ್ಚಗಳನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ನೇಮಿಸಬಹುದಾದ ಅಂಥ ವಿಧಾನದಲ್ಲಿ ಭರಿಸತಕ್ಕದ್ದು.

(2) ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ವಿಶ್ವವಿದ್ಯಾಲಯದ ವೆಚ್ಚವನ್ನು ಭರಿಸಲು 47, 48, 49 ಮತ್ತು 50ನೇ ಪ್ರಕರಣಗಳ ಅಡಿಯಲ್ಲಿ ಉಲ್ಲೇಖಿಸಲಾದ ನಿಧಿಯು ಸಾಕಷ್ಟು ಇಲ್ಲದಿದ್ದಲ್ಲಿ, ಅಂಥ ವೆಚ್ಚವನ್ನು ಸರ್ಕಾರವು, ವಿಶ್ವವಿದ್ಯಾಲಯದ ಸ್ವತ್ತುಗಳು ಮತ್ತು ಆಸ್ತಿಗಳನ್ನು ವಿಲೇ ಮಾಡುವ ಮೂಲಕ ಭರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಸಮಾಪನೆಯು ದುರ್ವ್ಯವಹರಣೆ ಅಥವಾ ದುರಾಡಳಿತದ ಕಾರಣಗಳಿಗಾಗಿ ಆಗಿದ್ದರೆ, ಸರ್ಕಾರವು ಅಂಥ ದುರ್ವ್ಯವಹಾರಕ್ಕೆ ಅಥವಾ ದುರಾಡಳಿತಕ್ಕೆ ಹೊಣೆಯಾಗಿರುವ ವ್ಯಕ್ತಿಗಳನ್ನು ಗುರುತಿಸುವ ಮತ್ತು ಅವರ ಮೇಲೆ ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ದಂಡನೆಯನ್ನು ವಿಧಿಸಲು ಸ್ವತಂತ್ರವಾಗಿರತಕ್ಕದ್ದು.

**60. ತೊಂದರೆಗಳ ನಿವಾರಣೆಗೆ ಅಧಿಕಾರ.**– (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಅಥವಾ ಆದೇಶದ ಮೂಲಕ ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಐದು ವರ್ಷಗಳು ಮುಕ್ತಾಯವಾದ ತರುವಾಯ ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಅಧಿಸೂಚನೆ ಅಥವಾ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

**61. ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ.**– (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ಹೊರಡಿಸಲಾದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ

ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಉಭಯ ಸದನಗಳು ಒಪ್ಪಿದರೆ ತದನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ಧತಿಯು ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವನ್ನು ಉಂಟುಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಜಿ.ಕೆ. ಬೋರೇಗೌಡ**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) (೫೦೦ ಪ್ರತಿಗಳು)

A / BG - GPO/ 2515 /WPP-47/ 2009 - 2011

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ಪತ್ರಿಕೆ



| ಭಾಗ – IV-A | ಬೆಂಗಳೂರು, ಶುಕ್ರವಾರ, ಏಪ್ರಿಲ್ ೯, ೨೦೧೦ (ಚೈತ್ರ ೧೯, ಶಕ ವರ್ಷ ೧೯೩೨) | ಸಂ. ೩೭೭ |
|---|---|---|



## ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಸಚಿವಾಲಯ

ಅಧಿಸೂಚನೆ

**ಸಂಖ್ಯೆ: ಸಂವ್ಯಶಾಇ 49 ಶಾಸನ 2009, ಬೆಂಗಳೂರು, ದಿನಾಂಕ: 9ನೇ ಏಪ್ರಿಲ್, 2010**

ಅಜೀಂ ಪ್ರೇಂಜೀ ವಿಶ್ವವಿದ್ಯಾಲಯ ವಿಧೇಯಕ, 2010ಕ್ಕೆ, 2010ರ ಏಪ್ರಿಲ್ ಮಾಹೆಯ ಏಳನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2010ರ ಕರ್ನಾಟಕ ಅಧಿನಿಯಮ ಸಂಖ್ಯೆ:14 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2010ರ ಕರ್ನಾಟಕ ಅಧಿನಿಯಮ ಸಂಖ್ಯೆ:14**

(2010ರ ಏಪ್ರಿಲ್ ಒಂಭತ್ತನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಅಜೀಂ ಪ್ರೇಂಜೀ ವಿಶ್ವವಿದ್ಯಾಲಯ ಅಧಿನಿಯಮ, 2010**

(2010ರ ಏಪ್ರಿಲ್ ಏಳನೇ ದಿನಾಂಕದಂದು ರಾಜ್ಯಪಾಲರ ಅನುಮೋದನೆಯನ್ನು ಪಡೆಯಲಾಗಿದೆ)

ಶಿಕ್ಷಣ ಮತ್ತು ಸಂಬಂಧಪಟ್ಟ ಅಭಿವೃದ್ಧಿ ವಲಯಗಳಲ್ಲಿ ಅಸಾಧಾರಣ ನೇತೃತ್ವ, ಸಂಶೋಧಿತ ಜ್ಞಾನ ಮತ್ತು ನವ ವಿಚಾರಧಾರೆಗಳ ಅಭಿವೃದ್ಧಿಯ ಮೂಲಕ ಒಂದು ರೂಢಮೂಲ ಬದಲಾವಣೆಯನ್ನು ಉತ್ತೇಜಿಸಿ, ಪರಿಕಲ್ಪಿಸಿ ಜಾರಿಗೆ ತರುವ ಉದ್ದೇಶದಿಂದ ಖಾಸಗಿ ವಲಯದಲ್ಲಿ ಒಂದು ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದಕ್ಕಾಗಿ ಒಂದು ಅಧಿನಿಯಮ.

ಕರ್ನಾಟಕ ರಾಜ್ಯದಲ್ಲಿ ಶಿಕ್ಷಣ ಮತ್ತು ಸಂಬಂಧಪಟ್ಟ ಅಭಿವೃದ್ಧಿ ವಲಯಗಳಲ್ಲಿ ಅಸಾಧಾರಣ ನೇತೃತ್ವ, ಸಂಶೋಧಿತ ಜ್ಞಾನ ಮತ್ತು ನವ ವಿಚಾರಧಾರೆಗಳ ಅಭಿವೃದ್ಧಿಯ ಮೂಲಕ ಒಂದು ರೂಢಮೂಲ ಬದಲಾವಣೆಯನ್ನು ಉತ್ತೇಜಿಸಿ, ಪರಿಕಲ್ಪಿಸಿ, ಜಾರಿಗೆ ತರುವ ಉದ್ದೇಶದಿಂದ ಖಾಸಗಿ ವಲಯದಲ್ಲಿ ಒಂದು ವಿಶ್ವವಿದ್ಯಾಲಯವನ್ನು ಸ್ಥಾಪಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೊಂದನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

## ಅಧ್ಯಾಯ – I

### ಪ್ರಾಥಮಿಕ

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.–** (1) ಈ ಅಧಿನಿಯಮವನ್ನು ಅಜೀಂ ಪ್ರೇಂಜಿ ವಿಶ್ವವಿದ್ಯಾಲಯ ಅಧಿನಿಯಮ, 2010 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪಿಸತಕ್ಕದ್ದು.

(3) ಇದು 2009ರ ನವೆಂಬರ್ 24ನೇ ದಿನಾಂಕದಿಂದ ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು.

**2. ಪರಿಭಾಷೆಗಳು.–** ಈ ಅಧಿನಿಯಮದಲ್ಲಿ ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,–

(ಎ) "ಪ್ರಶಿಕ್ಷಣ ಪರಿಷತ್ತು (ಅಕೆಡೆಮಿಕ್ ಕೌನ್ಸಿಲ್)" ಎಂದರೆ, 24ನೇ ಪ್ರಕರಣದಡಿಯಲ್ಲಿ ಸ್ಥಾಪಿಸಲಾದ ವಿಶ್ವವಿದ್ಯಾಲಯದ ಪ್ರಶಿಕ್ಷಣ ಪರಿಷತ್ತು;

(ಬಿ) "ಕಾರ್ಯಸೂಚಿ ವಿಷಯಗಳು", ಎಂದರೆ, ಶಾಸನಗಳಲ್ಲಿ ಹೆಸರಿಸಬಹುದಾದ ಮತ್ತು ಒಂದು ಸಭೆಯಲ್ಲಿ ಆ ವಿಷಯಗಳನ್ನು ಮತ್ತು ಕಲಾಪಗಳನ್ನು ಅನುಮೋದಿಸಬಹುದೆಂದು ತಮ್ಮ ಸಮ್ಮತಿ ಸೂಚಿಸಿ ಕುಲಾಧಿಪತಿಯವರು ಮುಂಚಿತವಾಗಿಯೇ ಲಿಖಿತ ಅನುಮೋದನೆಯನ್ನು ಕೊಟ್ಟಿದ್ದಾಗ ಮಾತ್ರವೇ ಸಂದರ್ಭಾನುಸಾರ ಪ್ರಬಂಧಕರ ಮಂಡಳಿ ಅಥವಾ ಆಡಳಿತ ಮಂಡಳಿ ಅಥವಾ ಯಾವುದೇ ಸಮಿತಿಯವರು ಕಾರ್ಯಸೂಚಿಯಲ್ಲಿ ಸೇರಿಸಬಹುದಾದ ಅಥವಾ ಚರ್ಚೆಗೆ ತೆಗೆದುಕೊಂಡು ನಿರ್ಣಯವನ್ನು ಕೊಡಬಹುದಾದ ಎಲ್ಲಾ ವಿಷಯಗಳು ಮತ್ತು ಕಲಾಪಗಳು;

(ಸಿ) "ಪ್ರಬಂಧಕರ ಮಂಡಳಿ" ಎಂದರೆ, 22ನೇ ಪ್ರಕರಣದಲ್ಲಿ ನಿರ್ದಿಷ್ಟವಾಗಿ ಹೇಳಿರುವ ವಿಶ್ವವಿದ್ಯಾಲಯದ ಪ್ರಬಂಧಕರ ಮಂಡಳಿ;

(ಡಿ) "ಆಡಳಿತ ಮಂಡಳಿ" ಎಂದರೆ, 23ನೇ ಪ್ರಕರಣದಲ್ಲಿ ನಿರ್ದಿಷ್ಟ ಪಡಿಸಿದ ವಿಶ್ವವಿದ್ಯಾಲಯದ ಆಡಳಿತ ಮಂಡಳಿ;

(ಇ) "ಕುಲಾಧಿಪತಿ", "ಕುಲಪತಿ", "ಸಹಕುಲಪತಿ" ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ ಮತ್ತು ಸಹಕುಲಪತಿ;

(ಎಫ್) "ಕ್ಯಾಂಪಸ್" ಎಂದರೆ, ಅದು ಎಲ್ಲಾದರೂ ಇರಲಿ ವಿಶ್ವವಿದ್ಯಾಲಯವು ಸ್ಥಾಪಿಸಿದ, ನಿರ್ವಹಿಸಿದ ಅಥವಾ ಮಾನ್ಯತೆ ನೀಡಿದ ಒಂದು ಕ್ಯಾಂಪಸ್;

(ಜಿ) "ಸಮಿತಿಗಳು" ಎಂದರೆ, ಸಂದರ್ಭಾನುಸಾರ ವಿಶ್ವವಿದ್ಯಾಲಯದ ವಿವಿಧ ಕಾರ್ಯಕರ್ತರು ರಚಿಸಿರುವ ಸಮಿತಿಗಳು ಮತ್ತು ಅದರಲ್ಲಿ ನಾಮನಿರ್ದೇಶನ ಸಮಿತಿ, ಹಣಕಾಸು ಸಮಿತಿ, ದೂರಶಿಕ್ಷಣ ಸಮಿತಿ ಮತ್ತು ಇತರ ಯಾವುವೇ ಸಮಿತಿಗಳು ಒಳಗೊಳ್ಳುತ್ತವೆ;

(ಎಚ್) "ಘಟಕ ಕಾಲೇಜು" ಎಂದರೆ, ವಿಶ್ವವಿದ್ಯಾಲಯವು ನಿರ್ವಹಿಸುತ್ತಿರುವ ಒಂದು ಕಾಲೇಜು ಅಥವಾ ಸಂಸ್ಥೆ;

(ಐ) "ದೂರಶಿಕ್ಷಣ" ಎಂದರೆ, ದೃಶ್ಯ ಸಂಪರ್ಕ, ಧ್ವನಿ ಸಂಪರ್ಕ, ಗಣಕಯಂತ್ರ, ಬಹುಮಾಧ್ಯಮ (ಮಲ್ಟಿ ಮೀಡಿಯ) ಪ್ರಸಾರ, ದೂರದರ್ಶನ ಪ್ರಸಾರ (ಟೆಲಿಕ್ಯಾಸ್ಟ್) ತಂತ್ರಜ್ಞಾನಗಳು ಮತ್ತು ಸಂಪರ್ಕಸಾಧನಗಳನ್ನು ಬಳಸಿಕೊಂಡು, ಒಂದು ತರಗತಿ, ಕಟ್ಟಡ ಅಥವಾ ನಿಯೋಜಿಸಿದ ಮುಂದಲ್ಲಿರುವ ಹೊರತಾದ ತರಗತಿ, ಕಟ್ಟಡ ಅಥವಾ ನಿವೇಶನದಲ್ಲಿರುವವರಿಗೆ ಶಿಕ್ಷಣವನ್ನು ನೀಡುವ ಪ್ರಕ್ರಿಯೆ ಮತ್ತು ಇದು ಅಂಚೆ ಶಿಕ್ಷಣ,

ವಿಚಾರಗೋಷ್ಠಿ, ಸಂಪರ್ಕ ಕಾರ್ಯಕ್ರಮ ಅಥವಾ ಅಂಥ ವಿಧಾನಗಳ ಯಾವುದೇ ಎರಡು ಅಥವಾ ಹೆಚ್ಚಿನ ಸಂಯೋಜನೆಗಳು ಮುಂತಾದವುಗಳನ್ನು ಒಳಗೊಳ್ಳುತ್ತದೆ;

(ಜೆ) "ದೂರ ಶಿಕ್ಷಣ ಸಮಿತಿ" ಎಂದರೆ, 26ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವಂಥ ವಿಶ್ವವಿದ್ಯಾಲಯದ ದೂರ ಶಿಕ್ಷಣ ಸಮಿತಿ;

(ಕೆ) "ಹಣಕಾಸು ಸಮಿತಿ" ಎಂದರೆ, 27ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವಂಥ ವಿಶ್ವವಿದ್ಯಾಲಯದ ಹಣಕಾಸು ಸಮಿತಿ;

(ಎಲ್) "ಪ್ರತಿಷ್ಠಾನ" ಎಂದರೆ, ಕಂಪೆನಿಗಳ ಅಧಿನಿಯಮ, 1956ರ 25ನೇ ಪ್ರಕರಣದಡಿಯಲ್ಲಿ ನೋಂದಾಯಿತವಾದ ಒಂದು ಕಂಪೆನಿಯಾದ ಅಜೀಂ ಪ್ರೇಂಜೀ ಪ್ರತಿಷ್ಠಾನ ಅಥವಾ ಕಂಪೆನಿಗಳ ಅಧಿನಿಯಮ, 1956ರ 25ನೇ ಪ್ರಕರಣದಡಿಯಲ್ಲಿ ಶ್ರೀ ಅಜೀಂ ಪ್ರೇಂಜಿಯವರು ಈ ಉದ್ದೇಶಕ್ಕಾಗಿ ರಚಿಸಿ ನೋಂದಾಯಿಸಿರುವ ಯಾವುದೇ ಇತರ ಪ್ರತಿಷ್ಠಾನ;

(ಎಂ) "ಸರ್ಕಾರ" ಎಂದರೆ, ಕರ್ನಾಟಕ ಸರ್ಕಾರ;

(ಎನ್) "ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳು" ಎಂದರೆ, ವಿಶ್ವವಿದ್ಯಾಲಯ ಅನುದಾನ ಆಯೋಗ, ಅಖಿಲ ಭಾರತ ತಾಂತ್ರಿಕ ವಿದ್ಯಾಪರಿಷತ್ತು, ರಾಷ್ಟ್ರೀಯ ಬೋಧಕ ಶಿಕ್ಷಣ ಪರಿಷತ್ತು, ಭಾರತೀಯ ವೈದ್ಯಕೀಯ ಪರಿಷತ್ತು, ಭಾರತೀಯ ಔಷಧ ವಿಜ್ಞಾನ ಪರಿಷತ್ತು, ರಾಷ್ಟ್ರೀಯ ಮೌಲ್ಯಮಾಪನ ಮತ್ತು ಅಧಿಮಾನ್ಯತಾ ಪರಿಷತ್ತು; ಭಾರತೀಯ ಕೃಷಿ ಸಂಶೋಧನಾ ಪರಿಷತ್ತು, ದೂರಶಿಕ್ಷಣ ಪರಿಷತ್ತು, ಭಾರತೀಯ ವೈಜ್ಞಾನಿಕ ಮತ್ತು ಸಂಶೋಧನಾ ಪರಿಷತ್ತು ಮುಂತಾದ, ಉನ್ನತ ಶಿಕ್ಷಣದಲ್ಲಿ ಮಾನಕ ಗುಣಮಟ್ಟದ ಶಿಕ್ಷಣ ದೊರೆಯುವಂತೆ ನೋಡಿಕೊಳ್ಳುವುದಕ್ಕಾಗಿ ಪ್ರಮಾಣಕಗಳು ಮತ್ತು ಷರತ್ತುಗಳನ್ನು ವಿಧಿಸುವುದಕ್ಕಾಗಿ, ಕೇಂದ್ರ ಸರ್ಕಾರವು ಸ್ಥಾಪಿಸಿರುವ ಒಂದು ಸಂಸ್ಥೆ ಮತ್ತು ಇದರಲ್ಲಿ ಸರ್ಕಾರವೂ ಸೇರಿರುತ್ತದೆ;

(ಒ) "ನಿಯಮಿಸಲಾದುದು" ಎಂದರೆ, ಈ ಅಧಿನಿಯಮದಡಿಯಲ್ಲಿ ರಚಿಸಲಾದ ನಿಯಮಗಳ ಮೂಲಕ ರಾಜ್ಯ ಸರ್ಕಾರದಿಂದ ನಿಯಮಿಸಲಾದುದು;

(ಪಿ) "ಒಂದು ಘಟಕ ಕಾಲೇಜಿಗೆ ಸಂಬಂಧಪಟ್ಟಂತೆ ಪ್ರಾಂಶುಪಾಲರು" ಎಂದರೆ, ಘಟಕ ಕಾಲೇಜಿನ ಮುಖ್ಯಸ್ಥರು ಮತ್ತು ಪ್ರಾಂಶುಪಾಲರು ನೇಮಕವಾಗಿರದಿದ್ದಲ್ಲಿ ಅಥವಾ ನೇಮಕವಾದ ಪ್ರಾಂಶುಪಾಲರ ಗೈರುಹಾಜರಿಯಲ್ಲಿ ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ತಾತ್ಕಾಲಿಕವಾಗಿ ನೇಮಕಗೊಂಡಿರುವ ಉಪಪ್ರಾಂಶುಪಾಲರು ಅಥವಾ ಇತರ ಯಾವುದೇ ವ್ಯಕ್ತಿಯೂ ಇದರಲ್ಲಿ ಒಳಗೊಳ್ಳುತ್ತಾರೆ;

(ಕ್ಯೂ) "ಕುಲಸಚಿವರು" ಎಂದರೆ, ವಿಶ್ವವಿದ್ಯಾಲಯದ ಕುಲಸಚಿವರು;

(ಆರ್) "ಪ್ರಾದೇಶಿಕ ಕೇಂದ್ರ" ಎಂದರೆ, ಯಾವುದೇ ಪ್ರದೇಶದಲ್ಲಿನ ಅಧ್ಯಯನ ಕೇಂದ್ರಗಳ ಕಾರ್ಯವನ್ನು ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ಮಾಡುವ ಉದ್ದೇಶಕ್ಕಾಗಿ ಮತ್ತು ಅಂಥ ಕೇಂದ್ರಕ್ಕೆ ಆಡಳಿತ ಮಂಡಳಿಯು ವಹಿಸಿಕೊಡಬಹುದಾದ ಇತರ ಕರ್ತವ್ಯಗಳನ್ನು ನೆರವೇರಿಸುವುದಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಅಥವಾ ನಿರ್ವಹಿಸಿಕೊಂಡುಬರುವ ಒಂದು ಕೇಂದ್ರ;

(ಎಸ್) ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ "ಪ್ರಾಯೋಜಕ ಪ್ರಾಧಿಕಾರ" ಅಥವಾ "ಪ್ರಾಯೋಜಕ ಸಂಸ್ಥೆ" ಎಂದರೆ, ಪ್ರತಿಷ್ಠಾನ;

(ಟಿ) "ರಾಜ್ಯ" ಎಂದರೆ, ಕರ್ನಾಟಕ ರಾಜ್ಯ;

(ಯು) "ಶಾಸನಗಳು" ಮತ್ತು "ವಿನಿಯಮಗಳು" ಎಂದರೆ, ವಿಶ್ವವಿದ್ಯಾಲಯದ ಸಂಬಂಧಿಸಿದ ಪ್ರಾಧಿಕಾರಗಳು ರಚಿಸಿದ ಅನುಕ್ರಮವಾಗಿ ವಿಶ್ವವಿದ್ಯಾಲಯದ ಶಾಸನಗಳು ಮತ್ತು ವಿನಿಯಮಗಳು;

(ವಿ) "ಅಧ್ಯಯನ ಕೇಂದ್ರ" ಎಂದರೆ, ವಿದ್ಯಾರ್ಥಿಗಳಿಗೆ ಅಗತ್ಯವಾದ ಬುದ್ಧಿವಾದ, ಸಲಹೆಗಳನ್ನು ನೀಡುವ ಅಥವಾ ಇತರ ಯಾವುದೇ ನೆರವನ್ನು ನೀಡುವ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ, ನಿರ್ವಹಿಸಿಕೊಂಡುಬಂದ ಅಥವಾ ಮಾನ್ಯತೆ ನೀಡಿದ ಒಂದು ಕೇಂದ್ರ;

(ಡಬ್ಲ್ಯೂ) "ಅಧ್ಯಾಪಕರು" ಎಂದರೆ, ಒಬ್ಬ ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಪ್ರವಾಚಕರು ಅಥವಾ ಉಪನ್ಯಾಸಕರು ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಒಂದು ಘಟಕ ಕಾಲೇಜಿನಲ್ಲಿ ಬೋಧಿಸುವುದಕ್ಕೆ ಅಥವಾ ಸಂಶೋಧನೆ ನಡೆಸುವುದಕ್ಕೆ ಅಥವಾ ಸಂಶೋಧನೆಗೆ ಮಾರ್ಗದರ್ಶನ ನೀಡುವುದಕ್ಕೆ ನೇಮಕವಾದಂಥ ಯಾವುದೇ ವ್ಯಕ್ತಿ ಎಂದರ್ಥ ಹಾಗೂ ಅವರನ್ನು ಒಳಗೊಳ್ಳುತ್ತದೆ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗವು ನಿಯಮಿಸಿದ ಗುಣಮಟ್ಟಗಳಿಗೆ ಅನುಸಾರವಾಗಿ ಇರುವ ಘಟಕ ಕಾಲೇಜಿನ ಪ್ರಾಂಶುಪಾಲರು ಇದರಲ್ಲಿ ಒಳಗೊಳ್ಳುತ್ತಾರೆ;

(ಎಕ್ಸ್) "ವಿಶ್ವವಿದ್ಯಾಲಯ ಅನುದಾನಗಳ ಆಯೋಗ" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) 4ನೇ ಪ್ರಕರಣದಡಿಯಲ್ಲಿ ಸ್ಥಾಪಿತವಾದ ಆಯೋಗ;

(ವೈ) "ವಿಶ್ವವಿದ್ಯಾಲಯ" ಎಂದರೆ, 4ನೇ ಪ್ರಕರಣದಡಿಯಲ್ಲಿ ಸ್ಥಾಪಿಸಿ ನಿಗಮಿತಗೊಳಿಸಲಾದ ಅಜೀಂ ಪ್ರೇಂಜಿ ವಿಶ್ವವಿದ್ಯಾಲಯ;

(ಜೆಡ್) "ಸಂದರ್ಶಕರು" ಎಂದರೆ, 13ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ವಿಶ್ವವಿದ್ಯಾಲಯದ ಸಂದರ್ಶಕರು.

## ಅಧ್ಯಾಯ– II

## ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

**3. ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ.–** (1) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಹಕ್ಕನ್ನು ಪ್ರತಿಷ್ಠಾನವು ಹೊಂದಿರತಕ್ಕದ್ದು.

(2) ಪ್ರತಿಷ್ಠಾನವು ರಾಜ್ಯ ಸರ್ಕಾರಕ್ಕೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವವನ್ನು ಸಲ್ಲಿಸತಕ್ಕದ್ದು.

(3) ಪ್ರಸ್ತಾವವು ಈ ಮುಂದಿನ ವಿವರಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಪ್ರತಿಷ್ಠಾನದ ವಿವರಗಳೊಂದಿಗೆ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು;

(ii) ವಿಶ್ವವಿದ್ಯಾಲಯದ ವ್ಯಾಪ್ತಿ ಮತ್ತು ಸ್ಥಾನಮಾನ ಹಾಗೂ ಭೂಮಿಯ ಲಭ್ಯತೆ;

(iii) ಪ್ರಾರಂಭದ ದಿನಾಂಕದಿಂದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳಬೇಕೆಂದಿರುವ ಅಧ್ಯಯನ ಮತ್ತು ಸಂಶೋಧನಾ ಕಾರ್ಯಕ್ರಮಗಳ ಸ್ವರೂಪ ಮತ್ತು ಬಗೆಗಳು;

(iv) ಪ್ರಾರಂಭಿಸಬೇಕೆಂದು ಪ್ರಸ್ತಾಪಿಸಿರುವ ವಿದ್ಯಾ ವಿಭಾಗಗಳು (ಫ್ಯಾಕಲ್ಟಿಗಳು), ಅಧ್ಯಯನ ಕ್ರಮಗಳು ಮತ್ತು ಸಂಶೋಧನೆಗಳ ಸ್ವರೂಪ;

(v) ಕಟ್ಟಡಗಳು, ಪ್ರಯೋಗಶಾಲೆಗಳು ಮತ್ತು ರಚನಾ ಸೌಕರ್ಯಗಳನ್ನು ಒದಗಿಸುವಂಥ ಕ್ಯಾಂಪಸ್ ಅಭಿವೃದ್ಧಿ;

(vi) ಪ್ರಾರಂಭದ ದಿನಾಂಕದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ಕೈಗೊಳ್ಳಲಿರುವ ಬಂಡವಾಳ ವೆಚ್ಚಕ್ಕೆ ಹಂತಹಂತವಾಗಿ ಒದಗಿಸಲಿರುವ ಹಣದ ಏರ್ಪಾಟು ವಿವರ;

(vii) ಬಾಬುವಾರು ಆವರ್ತಕ ವೆಚ್ಚ, ಆರ್ಥಿಕ ಮೂಲಗಳು ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ತಗಲುವ ಅಂದಾಜು ವೆಚ್ಚ;

(viii) ಸಂಪನ್ಮೂಲ ಸಂಗ್ರಹಣೆಗಾಗಿ ಯೋಜನೆ ಮತ್ತು ಅದಕ್ಕೆ ಬಂಡವಾಳದಿಂದ ತಗಲುವ ವೆಚ್ಚ ಮತ್ತು ಪ್ರತಿಯೊಂದು ಮೂಲಕ್ಕೂ ಮರು ಸಂದಾಯ ಮಾಡುವ ರೀತಿ;

(ix) ವಿದ್ಯಾರ್ಥಿಗಳಿಂದ ಶುಲ್ಕ ವಸೂಲು ಮಾಡಿ ಆಂತರಿಕವಾಗಿ ನಿಧಿ ಸಂಗ್ರಹಿಸುವ ಯೋಜನೆ; ಸಲಹಾ ಸೇವೆ ಮತ್ತು ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಿಗೆ ಸಂಬಂಧಿಸಿದ ಇತರ ಚಟುವಟಿಕೆಗಳಿಂದ ನಿರೀಕ್ಷಿತ ಆದಾಯಗಳು ಮತ್ತು ಇತರ ನಿರೀಕ್ಷಿತ ಆದಾಯಗಳು;

(x) ಘಟಕವೊಂದಕ್ಕೆ ತಗಲುವ ವೆಚ್ಚದ ಶುಲ್ಕದಲ್ಲಿ ಆರ್ಥಿಕವಾಗಿ ದುರ್ಬಲವಾದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಎಷ್ಟರವರೆಗೆ ರಿಯಾಯಿತಿ ಅಥವಾ ವಿನಾಯತಿ ಕೊಡಲಾಗುವುದು, ಉಚಿತ ಶಿಕ್ಷಣ, ವಿದ್ಯಾರ್ಥಿ ವೇತನ ನೀಡಲಾಗುವುದು ಎಂಬುದರ ವಿವರಗಳನ್ನು ಮತ್ತು ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳಿಗೆ ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳು ಪ್ರಾಯೋಜಿಸಿದ ವಿದ್ಯಾರ್ಥಿಗಳಿಗೆ ಮತ್ತು ಭಾರತವನ್ನುಳಿದು ಇತರ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ವಿಧಿಸತಕ್ಕ ಶುಲ್ಕದ ದರಗಳು ಬೇರೆ ಬೇರೆ ಇದ್ದಲ್ಲಿ ಅವುಗಳನ್ನು ಸೂಚಿಸುವ ಶುಲ್ಕ ರಚನೆಯ ವಿವರಗಳು;

(xi) ಸಂಬಂಧಪಟ್ಟ ವಿದ್ಯಾ ವಿಭಾಗದಲ್ಲಿ ಎಷ್ಟು ವರ್ಷಗಳ ಅನುಭವ ಮತ್ತು ಪರಿಣಿತಿ ಪ್ರತಿಷ್ಠಾನವು ದೊರಕಿಸಿಕೊಡಲಿದೆ ಹಾಗೂ ಅದರ ಹಣಕಾಸಿನ ಸಂಪನ್ಮೂಲಗಳು;

(xii) ವಿಶ್ವವಿದ್ಯಾಲಯದಲ್ಲಿರುವ ಅಧ್ಯಯನ ಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕಾಗಿ ಇರುವ ವ್ಯವಸ್ಥೆ;

(xiii) ವಿಶ್ವವಿದ್ಯಾಲಯವು ಸ್ಥಾಪನೆಯಾಗುವುದಕ್ಕೆ ಮುಂಚೆ ನೆರವೇರಿಸಬೇಕೆಂದು ರಾಜ್ಯ ಸರ್ಕಾರವು ಅಗತ್ಯಪಡಿಸಬಹುದಾದಂಥ ಇತರ ಷರತ್ತುಗಳ ನೆರವೇರಿಕೆ ಯಾವ ಹಂತದಲ್ಲಿದೆ.

(4) ರಾಜ್ಯ ಸರ್ಕಾರವು, ಸ್ವೀಕೃತವಾದ ಪ್ರಸ್ತಾವಗಳನ್ನು ಪರೀಕ್ಷಿಸುವುದಕ್ಕಾಗಿ ಒಂದು ಪರಿಶೋಧನಾ ಸಮಿತಿಯನ್ನು ರಚಿಸತಕ್ಕದ್ದು; ಅದು ರಾಜ್ಯ ಸರ್ಕಾರಕ್ಕೆ ಶಿಫಾರಸ್ಸುಗಳನ್ನು ಮಾಡತಕ್ಕದ್ದು.

**4. ವಿಶ್ವವಿದ್ಯಾಲಯದ ಸ್ಥಾಪನೆ.**- (1) ರಾಜ್ಯ ಸರ್ಕಾರವು, ಪರಿಶೋಧನಾ ಸಮಿತಿಯು ಮಾಡಿದ ಶಿಫಾರಸ್ಸುಗಳನ್ನು ಪರಿಶೀಲಿಸಿದ ತರುವಾಯ ಮತ್ತು ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ, ಪ್ರತಿಷ್ಠಾನವು 3ನೇ ಪ್ರಕರಣದ (3)ನೇ ಉಪ-ಪ್ರಕರಣದಲ್ಲಿ ಅಗತ್ಯಪಡಿಸಲಾದ ವಿವರಗಳನ್ನು ಒದಗಿಸಿದೆ ಎಂದು ಮನಗಂಡರೆ, ಅದು 46ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಬೇಕೆಂದು ಪ್ರತಿಷ್ಠಾನಕ್ಕೆ ನಿರ್ದೇಶನ ನೀಡಬಹುದು.

(2) ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಸ್ಥಾಪನೆಯ ತರುವಾಯ, ರಾಜ್ಯಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, ರಾಜ್ಯದಲ್ಲಿ "ಅಜೀಂ ಪ್ರೇಂಜಿ ವಿಶ್ವವಿದ್ಯಾಲಯ" ಎಂಬ ಹೆಸರಿನ ಒಂದು ವಿಶ್ವವಿದ್ಯಾಲಯವನ್ನು ಸ್ಥಾಪಿಸುವುದಕ್ಕೆ ಮಂಜೂರಾತಿಯನ್ನು ನೀಡಬಹುದು.

(3) ಪ್ರಾಯೋಜಕ ಸಂಸ್ಥೆಯು ರಾಜ್ಯದಲ್ಲಿ ನಿರ್ಧರಿಸಬಹುದಾದಂಥ ಸ್ಥಳದಲ್ಲಿ ವಿಶ್ವವಿದ್ಯಾಲಯದ ಕೇಂದ್ರಕಾರ್ಯಸ್ಥಾನವು ಇರತಕ್ಕದ್ದು. ವಿಶ್ವವಿದ್ಯಾಲಯವು ತನ್ನ ಕ್ಯಾಂಪಸ್ಸುಗಳನ್ನು ಅಥವಾ ಪ್ರಾದೇಶಿಕ ಕೇಂದ್ರಗಳನ್ನು, ಅಧ್ಯಯನ ಕೇಂದ್ರಗಳನ್ನು, ಭಾರತದಲ್ಲಿ ಅಥವಾ ವಿದೇಶಗಳಲ್ಲಿ, ಆ ಬಗ್ಗೆ ಸಂಬಂಧಪಟ್ಟ ಸರ್ಕಾರಗಳ ಅನುಮತಿಯನ್ನು ಪಡೆದುಕೊಳ್ಳಬೇಕಾಗಿದ್ದಲ್ಲಿ, ಹಾಗೆ ಪಡೆದುಕೊಳ್ಳುವುದಕ್ಕೊಳಪಟ್ಟು, ಹೊಂದಿರತಕ್ಕದ್ದು.

(4) ಹಾಗೆ ಸ್ಥಾಪಿತವಾದ ವಿಶ್ವವಿದ್ಯಾಲಯವು ಅದರಲ್ಲಿನ ಕುಲಾಧಿಪತಿಯವರು, ಕುಲಪತಿಯವರು, ಪ್ರಬಂಧಕ ಮಂಡಳಿಯ ಸದಸ್ಯರುಗಳು ಆಡಳಿತ ಮಂಡಳಿಯ ಹಾಗೂ ಪ್ರಶಿಕ್ಷಣ ಪರಿಷತ್ತಿನ ಸದಸ್ಯರುಗಳಾಗಿ ತತ್ಕಾಲದಲ್ಲಿ ಹುದ್ದೆಯನ್ನು ಹೊಂದಿರುವವರು ಇವರೆಲ್ಲರೂ ಕೂಡಿ ಒಂದು ನಿಗಮಿತ ನಿಕಾಯವಾಗಿರತಕ್ಕದ್ದು. ಮತ್ತು ಅದು ವಿಶ್ವವಿದ್ಯಾಲಯದ ಹೆಸರಿನಲ್ಲಿ ದಾವೆ ಹೂಡಬಹುದು ಮತ್ತು ದಾವೆಗೊಳಗಾಗಬಹುದು.

(5) (2)ನೇ ಉಪ-ಪ್ರಕರಣದಡಿಯಲ್ಲಿ ವಿಶ್ವವಿದ್ಯಾಲಯವು ಸ್ಥಾಪನೆಯಾದ ಮೇಲೆ, ವಿಶ್ವವಿದ್ಯಾಲಯದ ಉದ್ದೇಶಕ್ಕಾಗಿ, ವಿಶ್ವವಿದ್ಯಾಲಯವು ಆರ್ಜಿಸಿದ, ರಚಿಸಿದ, ಏರ್ಪಾಟು ಮಾಡಿಕೊಂಡ ಅಥವಾ ಕಟ್ಟಲ್ಪಟ್ಟ ಭೂಮಿ ಮತ್ತಿತರ ಸ್ಥಿರ ಮತ್ತು ಚರ ಆಸ್ತಿಗಳು, ಅವು ಎಲ್ಲೇ ಇರಲಿ, ವಿಶ್ವವಿದ್ಯಾಲಯದಲ್ಲಿ ನಿಹಿತವಾಗಿರತಕ್ಕದ್ದು.

(6) ವಿಶ್ವವಿದ್ಯಾಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದ ಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂಥ ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

(7) ವಿಶ್ವವಿದ್ಯಾಲಯದಲ್ಲಿನ ಭೂಮಿ, ಕಟ್ಟಡ ಮತ್ತು ಇತರ ಆಸ್ತಿಗಳನ್ನು ಇತರ ಯಾವುದೇ ಉದ್ದೇಶಕ್ಕಾಗಿ ಬಳಸತಕ್ಕದ್ದಲ್ಲ.

5. **ಅನುದಾನಗಳು ಮತ್ತು ಹಣಕಾಸು ನೆರವು.**- ವಿಶ್ವವಿದ್ಯಾಲಯವು ಸ್ವಂತ ಧನಮೂಲ ಉಳ್ಳದ್ದಾಗಿರತಕ್ಕದ್ದು ಮತ್ತು ರಾಜ್ಯದಿಂದ ಅಥವಾ ರಾಜ್ಯದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಇತರ ಸಂಸ್ಥೆ ಅಥವಾ ನಿಗಮದಿಂದ ಯಾವುದೇ ನಿರ್ವಹಣಾ ಸಹಾಯ ಅನುದಾನ ಅಥವಾ ಯಾವುದೇ ಹಣಕಾಸು ನೆರವನ್ನು ಹಕ್ಕಿನಿಂದ ಕೇಳತಕ್ಕದ್ದಲ್ಲ ಅಥವಾ ಅದನ್ನು ಪಡೆಯಲು ಹಕ್ಕನ್ನು ಹೊಂದಿರತಕ್ಕದ್ದಲ್ಲ:

ಪರಂತು, ರಾಜ್ಯವು,-

(ಎ) ಇತರ ರಾಜ್ಯ ಸರ್ಕಾರದ ಸಂಘಟನೆಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿರುವಂಥದ್ದೇ ಸಂಶೋಧನೆ, ಅಭಿವೃದ್ಧಿ ಮತ್ತಿತರ ಚಟುವಟಿಕೆಗಳಿಗೆ; ಅಥವಾ

(ಬಿ) ರಾಜ್ಯ ಸರ್ಕಾರದ ನೆರವನ್ನು ಅವಲಂಬಿಸಿದ ಯಾವುದೇ ನಿರ್ದಿಷ್ಟ ಸಂಶೋಧನೆ ಅಥವಾ ಕಾರ್ಯಕ್ರಮಗಳಿಗಾಗಿ; ಮತ್ತು

(ಸಿ) ರಾಜ್ಯ ಕಾರ್ಯನೀತಿಯ ಬದಲಾವಣೆಗೆ ಒಳಪಟ್ಟು ಅಥವಾ ಅನ್ಯಥಾ ಇದೇ ಬಗೆಯ ವಿಶ್ವವಿದ್ಯಾಲಯಗಳಿಗೆ ಅಥವಾ ಅವುಗಳ ಪ್ರಯೋಜನಕ್ಕಾಗಿ ನೆರವು ಒದಗಿಸಿರುವ ಸಂದರ್ಭಗಳಲ್ಲಿ,

-ಅನುದಾನದ ಮೂಲಕ ಅಥವಾ ಅನ್ಯಥಾ ನೆರವು ನೀಡುವುದೂ ಒಳಗೊಂಡಂತೆ ಹಣಕಾಸು ಬೆಂಬಲವನ್ನು ಒದಗಿಸಬಹುದು:

ಮತ್ತು ಪರಂತು, ವಿಶ್ವವಿದ್ಯಾಲಯವು, ಯಾವುದೇ ಇತರ ಮೂಲದಿಂದ ಯಾವುದೇ ಆರ್ಥಿಕ ನೆರವನ್ನು ಸ್ವೀಕರಿಸಬಹುದು.

6. ಘಟಕ ಕಾಲೇಜನ್ನು ಸ್ಥಾಪಿಸುವುದಕ್ಕೆ ಅಧಿಕಾರ.– ವಿಶ್ವವಿದ್ಯಾಲಯವು, ರಾಜ್ಯದಲ್ಲಿ ತನಗೆ ಸೂಕ್ತವೆನಿಸುವಂಥ ಸ್ಥಳಗಳಲ್ಲಿ ಘಟಕ ಕಾಲೇಜುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದಿರಬಹುದು.

7. ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು.– ವಿಶ್ವವಿದ್ಯಾಲಯವು, ತನ್ನ ಭವಿಷ್ಯದ್‌ದೃಷ್ಟಿ ಮತ್ತು ಧ್ಯೇಯೋದ್ದೇಶಗಳನ್ನು ಸಾಧಿಸಲು ವಿವಿಧ ಬಗೆಯ ಕಾರ್ಯತಂತ್ರಗಳನ್ನು ಈ ಮುಂದಿನಂತೆ ಕೈಗೊಳ್ಳಬಹುದು:–

(i) ಪ್ರಾಥಮಿಕ ಶಿಕ್ಷಣ, ಪ್ರೌಢ ಶಿಕ್ಷಣ, ಶಿಕ್ಷಣ ಆಡಳಿತ, ಶಿಕ್ಷಣ ಕಾರ್ಯನೀತಿ, ಹಣಕಾಸಿನ ಶಿಕ್ಷಣ, ಶಾಲಾಗುಣಮಟ್ಟದ ಚೌಕಟ್ಟುಗಳು, ಬೋಧನೆ–ಕಲಿಕೆ, ಬೋಧಕರ ಶಿಕ್ಷಣ, ಅಭಿವೃದ್ಧಿಯ ಇತರ ಸಂಬಂಧಪಟ್ಟ ಕ್ಷೇತ್ರಗಳನ್ನು ಒಳಗೊಂಡ ಶಿಕ್ಷಣದಲ್ಲಿನ ತಂತ್ರಜ್ಞಾನ ಮತ್ತು ವಿಜ್ಞಾನಗಳು, ಸಮಾಜ ವಿಜ್ಞಾನಗಳು, ಮಾನವಿಕ ವಿಜ್ಞಾನಗಳು ಮತ್ತು ಆಡಳಿತ ವಿಜ್ಞಾನ ಈ ರಂಗಗಳ ವಿವಿಧ ವಿಭಾಗಗಳಲ್ಲಿ ಶಿಕ್ಷಣ, ಬೋಧನೆ, ತರಬೇತಿ, ಸಂಶೋಧನೆ ಮತ್ತು ಅಭಿವೃದ್ಧಿಯನ್ನು ಒದಗಿಸುವುದು ಮತ್ತು ಈ ರಂಗಗಳಲ್ಲಿ ಸಂಶೋಧನೆ, ಜ್ಞಾನ ಸಂವರ್ಧನೆ ಹಾಗೂ ಪ್ರಸಾರಕ್ಕೆ ಏರ್ಪಾಡುಗಳನ್ನು ಮಾಡುವುದು;

(ii) ಬೋಧಕರಿಗೆ, ಬೋಧಕರಿಗೆ ಶಿಕ್ಷಣ ನೀಡುವವರಿಗೆ, ಉನ್ನತ ಶಿಕ್ಷಣ ಮತ್ತು ವೃತ್ತಿ ಶಿಕ್ಷಣಗಳಲ್ಲಿನ ಬೋಧಕರಿಗೆ, ಆಡಳಿತಗಾರರಿಗೆ ಮತ್ತು ಭಾರತದ ವಿವಿಧ ರಾಜ್ಯಗಳು ಮತ್ತು ವಿದೇಶಗಳಲ್ಲಿ ಶಿಕ್ಷಣ ಮತ್ತಿತರ ಕ್ಷೇತ್ರಗಳಲ್ಲಿ ಕಾರ್ಯ- ನಿರ್ವಹಿಸುತ್ತಿರುವಂಥ ಅಭಿವೃದ್ಧಿ ವೃತ್ತಿಗರಿಗಾಗಿ ಉನ್ನತ ಗುಣಮಟ್ಟದ ತರಬೇತಿ, ಸಾಮರ್ಥ್ಯ ನಿರ್ಮಾಣ ಪ್ರಕ್ರಿಯೆ ಮತ್ತು ಅಭಿವೃದ್ಧಿ ವ್ಯವಸ್ಥೆಗಳನ್ನು ವಿನ್ಯಾಸಗೊಳಿಸಿ ಒದಗಿಸುವುದು;

(iii) ಉತ್ತಮ ಗುಣಮಟ್ಟದ ಶಿಕ್ಷಣಕ್ಕೆ–ತನ್ನ ಕೊಡುಗೆ ನೀಡುವುದಕ್ಕಾಗಿ ಭಾರತದ ವಿವಿಧ ರಾಜ್ಯಗಳಲ್ಲಿ ಮತ್ತು ವಿದೇಶಗಳಲ್ಲಿ ಸಂಪನ್ಮೂಲ ಕೇಂದ್ರಗಳನ್ನು ಅಭಿವೃದ್ಧಿ ಪಡಿಸುವುದು;

(iv) ಶೈಕ್ಷಣಿಕ ಬದಲಾವಣೆ ಮತ್ತು ಸಾಮಾಜಿಕ ಅಭಿವೃದ್ಧಿ ಹಾಗೂ ಮಾನವಾಭಿವೃದ್ಧಿ ಬಗ್ಗೆ ಅರಿವನ್ನುಂಟು ಮಾಡಲು ಮತ್ತು ಆ ಬಗ್ಗೆ ಕೊಡುಗೆ ನೀಡಲು ಭಾರತ ಮತ್ತಿತರ ರಾಷ್ಟ್ರಗಳಲ್ಲಿನ ವಿವಿಧ ಸ್ಥಳಗಳಲ್ಲಿ ಕ್ಯಾಂಪಸ್ಸುಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದು;

(v) ಭಾರತ ಮತ್ತು ವಿದೇಶಗಳ ಮಿಲಿಯಾಂತರ ಶಿಕ್ಷಕರು, ಶಿಕ್ಷಣ ಆಡಳಿತಗಾರರು ಮತ್ತು ಅಭಿವೃದ್ಧಿ ವೃತ್ತಿಗರನ್ನು ಸಂಪರ್ಕಿಸುವುದು ಸಾಧ್ಯವಾಗುವಂತೆ ಮುಂದುವರೆದ ಹಾಗೂ ದೂರ ಶಿಕ್ಷಣ ಕಾರ್ಯಕ್ರಮಗಳನ್ನು ಪ್ರಾರಂಭಿಸುವುದು;

(vi) ಮೌಲ್ಯಮಾಪನದ ವಿವಿಧ ಆಧುನಿಕ ವಿಧಾನಗಳ ಮೂಲಕ ಮಾಡಿದ ಮೌಲ್ಯಮಾಪನದಲ್ಲಿ ಉತ್ತೀರ್ಣರಾಗಿ ಶಿಕ್ಷಣವನ್ನು ಯಶಸ್ವಿಯಾಗಿ ಮುಗಿಸಿದವರಿಗೆ ನೀಡಲು ಪದವಿಗಳು, ಡಿಪ್ಲೋಮೋಗಳು, ಪ್ರಮಾಣಪತ್ರಗಳು ಮತ್ತು ಯಶೋಪತ್ರ ಪ್ರದಾನದಂಥ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(vii) ವಿದ್ಯಾರ್ಥಿಗಳು, ಫ್ಯಾಕಲ್ಟಿ ಸದಸ್ಯರು ಮತ್ತಿತರರಿಗಾಗಿ ನಿರ್ದಿಷ್ಟ ಶೈಕ್ಷಣಿಕ ಮತ್ತು ಸಂಶೋಧನಾ ಕಾರ್ಯಕ್ರಮಗಳು, ತರಬೇತಿ ಕಾರ್ಯಕ್ರಮಗಳು ಮತ್ತು ವಿನಿಮಯ ಕಾರ್ಯಕ್ರಮಗಳನ್ನು ಪರಿಕಲ್ಪಿಸಿ, ವಿನ್ಯಾಸಗೊಳಿಸಿ, ಅಭಿವೃದ್ಧಿಪಡಿಸಿ ಒದಗಿಸಲು ಭಾರತ ಅಥವಾ ವಿದೇಶದ ಇತರ ಯಾವುದೇ ಕಾಲೇಜುಗಳು, ವಿಶ್ವವಿದ್ಯಾಲಯಗಳು ಸಂಶೋಧನಾ ಸಂಸ್ಥೆಗಳು, ಲಾಭರಹಿತ ಸಂಸ್ಥೆಗಳು, ಕೈಗಾರಿಕಾ ಸಂಸ್ಥೆಗಳು, ವೃತ್ತಿಪರ ಸಂಸ್ಥೆಗಳು ಅಥವಾ ಇತರ ಸಂಸ್ಥೆಗಳೊಂದಿಗೆ ಸಹಯೋಗವನ್ನು ಹೊಂದುವುದು;

(viii) ವಿಚಾರಗೋಷ್ಠಿಗಳು, ಸಮ್ಮೇಳನಗಳು, ಸಕ್ರಿಯ ಶೈಕ್ಷಣಿಕ ಕಾರ್ಯಕ್ರಮಗಳು, ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳು, ಪ್ರಕಟಣೆಗಳು ಹಾಗೂ ತರಬೇತಿ ಕಾರ್ಯಕ್ರಮಗಳು ಮತ್ತು ಇತರ ಕಾರ್ಯಕ್ರಮಗಳ

ಮೂಲಕ, ಶಿಕ್ಷಣ ಮತ್ತು ಅದಕ್ಕೆ ಸಂಬಂಧಿಸಿದ ಅಭಿವೃದ್ಧಿ ಕ್ಷೇತ್ರಗಳ ವಿಚಾರಗಳನ್ನು ಕುರಿತು ಜ್ಞಾನ ಪ್ರಸಾರ ಮಾಡುವುದು ಹಾಗೂ ಸಾರ್ವಜನಿಕ ಚರ್ಚೆಯನ್ನು ಉತ್ತೇಜಿಸಿ ನಡೆಸಿಕೊಡುವುದು;

(ix) ರಾಜ್ಯ ಸರ್ಕಾರದ ಪೂರ್ವಾನುಮತಿಯೊಡನೆ, ವಿಶ್ವಾದ್ಯಂತ ಇರುವ ಉತ್ತಮ ಗುಣಮಟ್ಟದ ಇತರ ಯಾವುವೇ ಸಂಸ್ಥೆಗಳೊಂದಿಗೆ ಸಹಭಾಗಿಗಳಾಗಿ ವಿಶ್ವವಿದ್ಯಾಲಯದ ಬೋಧಕ ವೃಂದ (ಫ್ಯಾಕಲ್ಟಿ) ಮತ್ತು ಸಂಶೋಧಕರ ಅಭಿವೃದ್ಧಿ ಮತ್ತು ತರಬೇತಿಗಾಗಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು;

(x) ರಾಜ್ಯ ಸರ್ಕಾರದ ಪೂರ್ವಾನುಮತಿಯೊಡನೆ, ಭಾರತದಲ್ಲಿನ ಅಥವಾ ವಿದೇಶದಲ್ಲಿನ ಯಾವುದೇ ಸಂಸ್ಥೆಯೊಂದಿಗೆ ಸಹಯೋಗ ಹೊಂದಿ ಸಂಶೋಧನೆ ಮತ್ತು ಅಭಿವೃದ್ಧಿಯನ್ನು ಕೈಗೊಳ್ಳುವುದು;

(xi) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಸಾಧಿಸಲು ಮತ್ತು ಉತ್ತೇಜಿಸಲು ಅವಶ್ಯವಾದ ಅಥವಾ ಸೂಕ್ತವಾದ ಕ್ರಮ ಕೈಗೊಳ್ಳುವುದು;

(xii) ಭಾರತದಲ್ಲಿನ ಶಿಕ್ಷಣ ಮತ್ತಿತರ ಅಭಿವೃದ್ಧಿ ವಲಯಗಳ ಪ್ರವರ್ಧನೆಗಾಗಿ ಸರ್ಕಾರದಿಂದ ಅನುಮೋದಿತವಾಗಬಹುದಾದ ಯಾವುದೇ ಧ್ಯೇಯೋದ್ದೇಶದ ಸಾಧನೆಗೆ ಶ್ರಮಿಸುವುದು.

8. ವಿಶ್ವವಿದ್ಯಾಲಯದ ಅಧಿಕಾರಗಳು.- ವಿಶ್ವವಿದ್ಯಾಲಯವು ಈ ಮುಂದಿನ ಕಾರ್ಯಗಳನ್ನು ಮಾಡಲು ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ಶಾಸನಗಳಲ್ಲಿ ಹೇಳಲಾದ ರೀತಿಯಲ್ಲಿ ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿರ್ಧರಿಸಬಹುದಾದಂಥ ಕ್ಯಾಂಪಸ್ಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದು, ನಿರ್ವಹಿಸುವುದು ಮತ್ತು ಅವುಗಳಿಗೆ ಮನ್ನಣೆ ನೀಡುವುದು;

(ii) ವಿಶ್ವವಿದ್ಯಾಲಯದ ಉದ್ದೇಶವನ್ನು ಕಾರ್ಯರೂಪಕ್ಕೆ ತರುವಲ್ಲಿ ಅಗತ್ಯವಾಗಬಹುದಾದಂಥ ಅಥವಾ ಕಾರ್ಯಸಾಧ್ಯವಾಗಬಹುದಾದಂಥ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು;

(iii) ಶಾಸನಗಳಲ್ಲಿ ಹೇಳಲಾದ ರೀತಿಯಲ್ಲಿ ಮತ್ತು ಷರತ್ತುಗಳಿಗೊಳಪಟ್ಟು ಪದವಿಗಳು ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರದಾನಮಾಡುವುದು;

(iv) ಶಾಸನಗಳನ್ವಯ ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿ ವೇತನಗಳು ಮತ್ತು ಬಹುಮಾನಗಳು, ಇತ್ಯಾದಿಗಳನ್ನು ಸ್ಥಾಪಿಸುವುದು ಮತ್ತು ನೀಡುವುದು;

(v) ಸಂದರ್ಭಾನುಸಾರ ಶಾಸನಗಳಲ್ಲಿ ಅಥವಾ ನಿಯಮಗಳಲ್ಲಿ ನಿಗದಿಪಡಿಸಬಹುದಾದಂಥ ಶುಲ್ಕಗಳು, ಬಿಲ್ಲುಗಳು, ಖರೀದಿ ಪಟ್ಟಿಗಳನ್ನು ಕೇಳಿಪಡೆದುಕೊಳ್ಳುವುದು ಮತ್ತು ಸ್ವೀಕರಿಸುವುದು ಹಾಗೂ ಚಾರ್ಜುಗಳನ್ನು ವಸೂಲು ಮಾಡುವುದು;

(vi) ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಪಠ್ಯೇತರ ಚಟುವಟಿಕೆಗಳಿಗೆ ಅವಕಾಶಗಳನ್ನು ಕಲ್ಪಿಸುವುದು;

(vii) ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಕ್ಯಾಂಪಸುಗಳ, ಪ್ರಾದೇಶಿಕ ಕೇಂದ್ರಗಳ, ಅಧ್ಯಯನ ಕೇಂದ್ರಗಳ ಫ್ಯಾಕಲ್ಟಿ, ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವುದು;

(viii) ವಿಶ್ವವಿದ್ಯಾಲಯದ ಅಥವಾ ~~ಒಂದು~~ ಘಟಕ ಕಾಲೇಜಿನ ಅಥವಾ ಕ್ಯಾಂಪಸ್ಸಿನ ಪ್ರಾದೇಶಿಕ ಕೇಂದ್ರದ, ಅಧ್ಯಯನ ಕೇಂದ್ರದ ಉದ್ದೇಶಕ್ಕಾಗಿ ಯಾವುದೇ ರೀತಿಯ ದಾನಗಳು ಮತ್ತು ಕೊಡುಗೆಗಳನ್ನು ಸ್ವೀಕರಿಸುವುದು ಮತ್ತು ನ್ಯಾಸ ಮತ್ತು ದತ್ತಿ ಆಸ್ತಿಗಳೂ ಸೇರಿದಂತೆ, ಯಾವುದೇ ಚರ ಅಥವಾ ಸ್ಥಿರ

ಆಸ್ತಿಯನ್ನು ಅರ್ಜಿಸುವುದು, ಹೊಂದಿರುವುದು, ನಿರ್ವಹಿಸುವುದು, ನಡೆಸುವುದು ಮತ್ತು ಹಸ್ತಾಂತರ ಮಾಡುವುದು;

(ix) ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸಿಕೊಂಡು ಬರುವುದು ಹಾಗೂ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ ವಿದ್ಯಾರ್ಥಿಗಳಿಗೆ ವಸತಿ ಸ್ಥಳಗಳಾಗಿ ಮಾನ್ಯತೆ ನೀಡುವುದು;

(x) ವಸತಿಯ ಮೇಲ್ವಿಚಾರಣೆ ಮಾಡುವುದು ಮತ್ತು ನಿಯಂತ್ರಣ ಮಾಡುವುದು ಹಾಗೂ ವಿದ್ಯಾರ್ಥಿಗಳು ಮತ್ತು ಎಲ್ಲಾ ಪ್ರವರ್ಗಗಳ ಸಿಬ್ಬಂದಿಗಳಲ್ಲಿ ಶಿಸ್ತು ನಿಯಂತ್ರಣ ಮಾಡುವುದು ಮತ್ತು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ನಡತೆ ಸಂಹಿತೆಯನ್ನು ರೂಪಿಸುವುದೂ ಒಳಗೊಂಡಂತೆ, ಅಂಥ ಸಿಬ್ಬಂದಿಗಳ ಸೇವಾಷರತ್ತುಗಳನ್ನು ನಿರೂಪಿಸುವುದು;

(xi) ಶೈಕ್ಷಣಿಕ, ಆಡಳಿತಾತ್ಮಕ ಮತ್ತು ಬೆಂಬಲ ಸಿಬ್ಬಂದಿಯ ಹುದ್ದೆಗಳನ್ನು ಮತ್ತು ಇತರ ಅವಶ್ಯ ಹುದ್ದೆಗಳನ್ನು ಸೃಜಿಸುವುದು;

(xii) ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ಉದ್ದೇಶಗಳಿಗಾಗಿ ಇತರೆ ವಿಶ್ವವಿದ್ಯಾಲಯಗಳೊಡನೆ ಸಹಕರಿಸುವುದು ಮತ್ತು ಸಹಯೋಗ ಹೊಂದುವುದು;

(xiii) ದೂರ ಶಿಕ್ಷಣಕ್ಕೆ ಮತ್ತು ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯಕ್ರಮಗಳಿಗೆ ಸಂಬಂಧಪಟ್ಟಂತೆ ದೂರ ಶಿಕ್ಷಣವನ್ನು ಯಾವ ರೀತಿಯಲ್ಲಿ ಸಂಘಟಿಸಬಹುದು ಎಂಬುದಕ್ಕೆ ಉಪಬಂಧ ಕಲ್ಪಿಸುವುದು;

(xiv) ಶಿಕ್ಷಕರಿಗೆ, ಪಾಠಗಳನ್ನು ರಚಿಸುವವರಿಗೆ, ಮೌಲ್ಯಮಾಪಕರಿಗೆ ಮತ್ತಿತರ ಶೈಕ್ಷಣಿಕ ಸಿಬ್ಬಂದಿಗೆ ಪುನರ್ಮನನ ವ್ಯಾಸಂಗಕ್ರಮಗಳು, ಅಭಿಮುಖ ತರಬೇತಿ ಕಾರ್ಯಾಗಾರಗಳು, ವಿಚಾರಗೋಷ್ಠಿಗಳು ಮತ್ತಿತರ ಕಾರ್ಯಕ್ರಮಗಳನ್ನು ಏರ್ಪಡಿಸುವುದು ಮತ್ತು ನಡೆಸುವುದು;

(xv) ಪ್ರಶಿಕ್ಷಣ ಪರಿಷತ್ತಿನ ಅನುಮೋದನೆಯೊಂದಿಗೆ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಪ್ರಾದೇಶಿಕ ಕೇಂದ್ರಗಳ, ಅಧ್ಯಯನ ಕೇಂದ್ರಗಳಿಗೆ ಪ್ರವೇಶಕ್ಕೆ ಮಾನಕ ಗುಣಮಟ್ಟಗಳನ್ನು ನಿರ್ಧರಿಸುವುದು;

(xvi) ಆಡಳಿತ ಮಂಡಳಿ ಅನುಮೋದನೆಯೊಂದಿಗೆ ವಿಶ್ವವಿದ್ಯಾಲಯದಲ್ಲಿ ಅಥವಾ ಘಟಕ ಕಾಲೇಜು, ಪ್ರಾದೇಶಿಕ ಕೇಂದ್ರ ಅಥವಾ ಅಧ್ಯಯನ ಕೇಂದ್ರದಲ್ಲಿ ಯಾವುದೇ ವ್ಯಾಸಂಗಕ್ರಮಕ್ಕೆ ಪ್ರವೇಶ ಪಡೆಯಲು ರಾಜ್ಯದ ವಿದ್ಯಾರ್ಥಿಗಳಿಗೆ ವಿಶೇಷ ಉಪಬಂಧಗಳನ್ನು ಕಲ್ಪಿಸುವುದು;

(xvii) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಕಾರ್ಯರೂಪಕ್ಕೆ ತರಲು ಅವಶ್ಯವಾಗಬಹುದಾದಂಥ ಇತರ ಎಲ್ಲಾ ಕ್ರಮಗಳನ್ನು ಅಥವಾ ಕಾರ್ಯಗಳನ್ನು, ಅವು ಮೇಲೆ ಹೇಳಿದ ಅಧಿಕಾರಗಳಿಗೆ ಪ್ರಾಸಂಗಿಕವಾಗಿರಲಿ ಅಥವಾ ಇಲ್ಲದಿರಲಿ, ಕೈಗೊಳ್ಳುವುದು;

(xviii) ಪರೀಕ್ಷೆಗಳ ಆಧಾರದ ಮೇಲೆ ಅಥವಾ ಇತರ ಯಾವುದೇ ಮೌಲ್ಯಮಾಪನ ವಿಧಾನದ ಆಧಾರದ ಮೇಲೆ ನೀಡಲು ಪದವಿಗಳು, ಡಿಪ್ಲೋಮಾಗಳು, ಪ್ರಮಾಣಪತ್ರಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಸ್ಥಾಪಿಸುವುದು;

(xix) ಫಿಲಂಗಳು, ಕ್ಯಾಸೆಟ್‌ಗಳು, ಧ್ವನಿಸುರುಳಿಗಳು, ದೃಶ್ಯಸುರುಳಿಗಳು, ಸಿ.ಡಿ., ವಿ.ಸಿ.ಡಿ. ಮತ್ತಿತರ ತಂತ್ರಾಂಶಗಳೂ ಸೇರಿದಂತೆ ಬೋಧಕ ಸಾಮಗ್ರಿಗಳನ್ನು ತಯಾರಿಸುವುದಕ್ಕಾಗಿ ಅವಕಾಶ ಕಲ್ಪಿಸುವುದು;

(xx) ಇತರ ವಿಶ್ವವಿದ್ಯಾಲಯಗಳ, ಸಂಸ್ಥೆಗಳ ಅಥವಾ ಇತರ ಉನ್ನತ ವಿದ್ಯಾಭ್ಯಾಸದ ಸ್ಥಳಗಳ ಪರೀಕ್ಷೆಗಳು ಅಥವಾ ವ್ಯಾಸಂಗ ಅವಧಿಗಳನ್ನು (ಪೂರ್ಣವಾಗಿ ಅಥವಾ ಭಾಗಶ:) ವಿಶ್ವವಿದ್ಯಾಲಯದ ಪರೀಕ್ಷೆಗಳು ಅಥವಾ ವ್ಯಾಸಂಗ ಅವಧಿಗಳಿಗೆ ಸಮನೆಂದು ಮಾನ್ಯ ಮಾಡುವುದು ಮತ್ತು ಹಾಗೆ ನೀಡಿದ ಮಾನ್ಯತೆಗಳನ್ನು ಯಾವುದೇ ಸಮಯದಲ್ಲಿ ಹಿಂದಕ್ಕೆ ಪಡೆಯುವುದು;

(xxi) ಪ್ರಬಂಧಕ ಮಂಡಳಿಯ ಅನುಮೋದನೆಯೊಡನೆ ವಿಶ್ವವಿದ್ಯಾಲಯದ ಉದ್ದೇಶಗಳಿಗಾಗಿ ವಿಶ್ವವಿದ್ಯಾಲಯದ ಸ್ವತ್ತುಗಳನ್ನು ಭದ್ರತೆಯಾಗಿ ನೀಡಿ ಅಥವಾ ನೀಡದೆ ಹಣವನ್ನು ಪಡೆಯುವುದು, ಸಂಗ್ರಹಿಸುವುದು, ಚಂದಾದಾರರಾಗುವುದು ಮತ್ತು ಸಾಲ ಪಡೆಯುವುದು;

(xxii) ವಿಶ್ವವಿದ್ಯಾಲಯದ ಮೇಲಿನ ಉದ್ದೇಶಗಳಿಗೆ ಸಂಬಂಧಿಸಿದ ಅಥವಾ ಪ್ರಾಸಂಗಿಕವಾದ ಯಾವುದೇ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು.

**9. ವಿಶ್ವವಿದ್ಯಾಲಯವು ಎಲ್ಲಾ ವರ್ಗ, ಜಾತಿ, ಮತ ಮತ್ತು ಲಿಂಗಭೇದವಿಲ್ಲದೆ ಎಲ್ಲರಿಗೂ ಮುಕ್ತವಾಗಿರತಕ್ಕದ್ದು.**- ವಿಶ್ವವಿದ್ಯಾಲಯವು ವರ್ಗ, ಮತ ಅಥವಾ ಲಿಂಗಭೇದವಿಲ್ಲದೆ ಎಲ್ಲಾ ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು:

ಪರಂತು, ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯಕ್ರಮಗಳಲ್ಲಿನ ಒಟ್ಟು ಸೀಟುಗಳ ಶೇಕಡ ಇಪ್ಪತ್ತೈದಕ್ಕಿಂತ ಕಡಿಮೆಯಿಲ್ಲದ ಸೀಟುಗಳಿಗೆ ಪ್ರವೇಶವನ್ನು ಕರ್ನಾಟಕ ರಾಜ್ಯದಲ್ಲಿ ಅಧಿವಾಸಿಗಳಾಗಿರುವ ವಿದ್ಯಾರ್ಥಿಗಳಿಗೆ, ಅವರು ಪ್ರವೇಶಕ್ಕೆ ಇರುವ ಮಾನದಂಡಗಳನ್ನು ಪೂರೈಸುವುದಕ್ಕೆ ಒಳಪಟ್ಟು, ಕಾಯ್ದಿರಿಸತಕ್ಕದ್ದು:

ಮತ್ತು ಪರಂತು, ಅಂಥ ವಿದ್ಯಾರ್ಥಿಗಳು ಸಾಕಷ್ಟು ಸಂಖ್ಯೆಯಲ್ಲಿ ಲಭ್ಯವಿಲ್ಲದಿದ್ದಾಗ ಹಾಗೆ ಕಾಯ್ದಿರಿಸಿದ ಸೀಟುಗಳನ್ನು ಸಾಮಾನ್ಯ ವರ್ಗದ ಅಭ್ಯರ್ಥಿಗಳಿಂದ ಭರ್ತಿಮಾಡತಕ್ಕದ್ದು.

**10. ರಾಷ್ಟ್ರೀಯ ಅಧಿಮಾನ್ಯತೆ.**- ವಿಶ್ವವಿದ್ಯಾಲಯವು ಸಂಬಂಧಪಟ್ಟ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳಿಂದ ಅಧಿಮಾನ್ಯತೆಯನ್ನು ಕೋರತಕ್ಕದ್ದು.

**11. ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು.**- ಪ್ರಾಯೋಜಕ ಸಂಸ್ಥೆಯು ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದಂತೆ ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಇವುಗಳಲ್ಲಿ ಪ್ರತಿಯೊಂದನ್ನು ಪ್ರಾಯೋಜಕ ಸಂಸ್ಥೆಯು ತನ್ನ ವಿವೇಚನಾನುಸಾರ ಚಲಾಯಿಸಬಹುದು, ಎಂದರೆ:-

(i) ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಪುನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(ii) ವಿಶ್ವವಿದ್ಯಾಲಯದ ಪ್ರಥಮ ಪ್ರಬಂಧಕ ಮಂಡಳಿಯನ್ನು ರಚಿಸುವುದು;

(iii) ಪ್ರಬಂಧಕ ಮಂಡಳಿಯ ಅಧ್ಯಕ್ಷರನ್ನು ನಾಮನಿರ್ದೇಶಿಸುವುದು;

(iv) ಪ್ರಬಂಧಕ ಮಂಡಳಿಯ ಸದಸ್ಯರಾಗಿ ಮೂರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(v) ಆಡಳಿತ ಮಂಡಳಿಯ ಸದಸ್ಯರಾಗಿ ಇಬ್ಬರು ವ್ಯಕ್ತಿಗಳನ್ನು ನಾಮ ನಿರ್ದೇಶಿಸುವುದು;

(vi) ವಿಶ್ವವಿದ್ಯಾಲಯದ ದತ್ತಿ ನಿಧಿಗೆ ದೇಣಿಗೆ ನೀಡಲು ನಿಧಿ ಮೂಲಗಳನ್ನು ನಿರ್ಧರಿಸುವುದು;

(vii) ವಿಶ್ವವಿದ್ಯಾಲಯದ ಹಣದ ವಿನಿಯೋಗ ಮತ್ತು ವೆಚ್ಚ ಮಾಡುವುದನ್ನು ನಿರ್ಧರಿಸುವುದು;

(viii) ಈ ಅಧಿನಿಯಮದಲ್ಲಿ ಉಪಬಂಧಿಸಿರುವ ವಿಧಾನದಲ್ಲಿ ಪ್ರಬಂಧಕ ಮಂಡಳಿಯ ಸಭೆಯಲ್ಲಿಯ ವಿವಾದಗಳನ್ನು ಬಗೆಹರಿಸುವುದು;

## ಅಧ್ಯಾಯ – III

## ವಿಶ್ವವಿದ್ಯಾಲಯದ ಅಧಿಕಾರಿಗಳು

**12. ವಿಶ್ವವಿದ್ಯಾಲಯದ ಅಧಿಕಾರಿಗಳು.–** ಈ ಮುಂದಿನವರು ವಿಶ್ವವಿದ್ಯಾಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:–

(i) ಸಂದರ್ಶಕರು;

(ii) ಕುಲಾಧಿಪತಿಗಳು;

(iii) ಕುಲಪತಿಗಳು;

(iv) ಸಹಕುಲಪತಿಗಳು;

(v) ಕುಲಸಚಿವರು;

(vi) ಹಣಕಾಸು ಅಧಿಕಾರ; ಮತ್ತು

(vii) ಶಾಸನದ ಮೂಲಕ ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಘೋಷಿಸಬಹುದಾದಂಥ ಇತರ ಅಧಿಕಾರಿಗಳು.

**13. ಸಂದರ್ಶಕರು.–** (1) ಕರ್ನಾಟಕದ ರಾಜ್ಯಪಾಲರು ವಿಶ್ವವಿದ್ಯಾಲಯದ ಸಂದರ್ಶಕರಾಗಿರತಕ್ಕದ್ದು.

(2) ಸಂದರ್ಶಕರು ತಾವು ಹಾಜರಿದ್ದಾಗ ಪದವಿಗಳನ್ನು ಮತ್ತು ಡಿಪ್ಲೋಮಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಸಂದರ್ಶಕರು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ವ್ಯವಹಾರಗಳಿಗೆ ಸಂಬಂಧಿಸಿದಂತೆ, ಯಾವುದೇ ಪತ್ರ ಅಥವಾ ಮಾಹಿತಿಯನ್ನು ತರಿಸಿಕೊಳ್ಳುವುದು.

(ii) ಸಂದರ್ಶಕರು, ತಾವು ಸ್ವೀಕರಿಸಿದ ಮಾಹಿತಿಯ ಆಧಾರದ ಮೇಲೆ ವಿಶ್ವವಿದ್ಯಾಲಯಗಳ ಯಾವುದೇ ಪ್ರಾಧಿಕಾರವು ಮಾಡಿದ ಯಾವುದೇ ಆದೇಶ, ನಡೆಸಿದ ವ್ಯವಹರಣೆಗಳು ಅಥವಾ ಕೈಗೊಂಡ ತೀರ್ಮಾನಗಳು ಈ ಅಧಿನಿಯಮ, ವಿನಿಯಮಗಳು, ಪರ್ಯಾದೇಶಗಳು ಅಥವಾ ನಿಯಮಗಳಿಗೆ ಪೂರಕವಾಗಿಲ್ಲವೆಂದು ಮನಗಂಡರೆ ಅವರು ವಿಶ್ವವಿದ್ಯಾಲಯದ ಹಿತಾಸಕ್ತಿಯಿಂದ ತಾವು ಸೂಕ್ತವೆಂದು ಭಾವಿಸಬಹುದಾದಂಥ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಹಾಗೆ ಹೊರಡಿಸಿದ ನಿರ್ದೇಶನಗಳನ್ನು ಸಂಬಂಧಪಟ್ಟವರೆಲ್ಲರೂ ಪಾಲಿಸತಕ್ಕದ್ದು.

**14. ಕುಲಾಧಿಪತಿಗಳು.–** (1) ಕುಲಾಧಿಪತಿಯವರನ್ನು ಪ್ರಾಯೋಜಕ ಸಂಸ್ಥೆಯು ನೇಮಿಸತಕ್ಕದ್ದು.

(2) ಪ್ರಾಯೋಜಕ ಸಂಸ್ಥೆಯ ಹಾಲಿ ಅಧ್ಯಕ್ಷರು ಮೊದಲನೇ ಕುಲಾಧಿಪತಿಗಳಾಗಿರತಕ್ಕದ್ದು, ಅವರು ತಮ್ಮ ಜೀವನಪರ್ಯಂತ ಕುಲಾಧಿಪತಿಗಳಾಗಿ ಪದಧಾರಣ ಮಾಡಿರತಕ್ಕದ್ದು.

(3) ತದನಂತರದ ಕುಲಾಧಿಪತಿಗಳು, ಅಂಥ ನೇಮಕಾತಿಯನ್ನು ಪರಿಗಣಿಸುವ ಸಂದರ್ಭದಲ್ಲಿ ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ, ಪ್ರಾಯೋಜಕ ಸಂಸ್ಥೆಯ ಅಧ್ಯಕ್ಷರಾಗಿರತಕ್ಕದ್ದು ಅಥವಾ ಪ್ರಾಯೋಜಕ ಸಂಸ್ಥೆಯ ನಿರ್ದೇಶಕರೂ ಸೇರಿದಂತೆ ಇತರ ವ್ಯಕ್ತಿಯಾಗಿರತಕ್ಕದ್ದು.

(4) ಹಾಗೆ ನೇಮಕಗೊಂಡ ತದನಂತರದ ಕುಲಾಧಿಪತಿಗಳು ಪ್ರಾಯೋಜಕ-ಸಂಸ್ಥೆಯು ನಿರ್ಧರಿಸಬಹುದಾದಂತೆ ಪದಧಾರಣ ಮಾಡತಕ್ಕದ್ದು.

(5) ಕುಲಾಧಿಪತಿಗಳು ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ಶಾಸನಗಳ ಅಡಿಯಲ್ಲಿ ಅವರಿಗೆ ಪ್ರದಾನ ಮಾಡಬಹುದಾದಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು, ಅವುಗಳಲ್ಲಿ ಈ ಮುಂದಿನ ಅಧಿಕಾರಗಳು ಒಳಗೊಂಡಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುವುದು;

(ii) ಸಂದರ್ಶಕರ ಅನುಪಸ್ಥಿತಿಯಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಘಟಿಕೋತ್ಸವಗಳಲ್ಲಿ ಅಧ್ಯಕ್ಷತೆಯನ್ನು ವಹಿಸುವುದು;

(iii) ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿಯ ಒಬ್ಬ ಸದಸ್ಯ ಮತ್ತು ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವುದು ಹಾಗೂ ಆಡಳಿತ ಮಂಡಳಿಯ ಎಲ್ಲಾ ಸಭೆಗಳಲ್ಲಿ ಹಾಜರಾಗುವುದು;

(iv) ಈ ಅಧಿನಿಯಮ ಮತ್ತು ಶಾಸನಗಳ ಉಪಬಂಧಗಳಿಗೆ ಅನುಸಾರವಾಗಿ ಕುಲಪತಿಗಳನ್ನು ನೇಮಿಸುವುದು ಅಥವಾ ಪುನರ್ನೇಮಿಸುವುದು ಅಥವಾ ಅವರ ನೇಮಕಾತಿ ಅಂತ್ಯಗೊಳಿಸುವುದು;

(v) ಈ ಅಧಿನಿಯಮದ 15ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ನಾಮನಿರ್ದೇಶಕ ಸಮಿತಿಯ ಸದಸ್ಯರಾಗಿ ಒಬ್ಬ ವ್ಯಕ್ತಿಯನ್ನು ನಾಮನಿರ್ದೇಶನ ಮಾಡುವುದು;

(vi) ಸಹಕುಲಪತಿಗಳು, ಡೀನ್, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿಗಳ ನೇಮಕಾತಿಯನ್ನು ಪೂರ್ವಾನುಮೋದಿಸುವುದು;

(vii) ಪ್ರಬಂಧಕ ಮಂಡಳಿಯ ಸದಸ್ಯರನ್ನಾಗಿ ಇಬ್ಬರು ಶಿಕ್ಷಣ ತಜ್ಞರನ್ನು ನಾಮನಿರ್ದೇಶಿಸುವುದು;

(viii) ಮೊದಲ ಸಹಕುಲಪತಿಗಳು ಮತ್ತು ಹಣಕಾಸು ಅಧಿಕಾರಿಗಳನ್ನು ನೇಮಿಸುವುದು;

(ix) ಮೊದಲ ಆಡಳಿತ ಮಂಡಳಿ, ಹಣಕಾಸು ಸಮಿತಿ, ಸಂಶೋಧನಾ ಪರಿಷತ್ತು, ದೂರ ಶಿಕ್ಷಣ ಸಮಿತಿ ಹಾಗೂ ಪ್ರಶಿಕ್ಷಣ ಪರಿಷತ್ತುಗಳನ್ನು ರಚಿಸುವುದು;

(x) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ ಕಾರ್ಯಸೂಚಿ ವಿಷಯಗಳನ್ನು ಪೂರ್ವಾನುಮೋದಿಸುವುದು;

(xi) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ (ಪ್ರಬಂಧಕ ಮಂಡಳಿಯ ಸಭೆಯಲ್ಲಿ ಉಂಟಾದ ಸಂಘರ್ಷಗಳನ್ನು ಹೊರತುಪಡಿಸಿ) ಸಂಘರ್ಷಗಳನ್ನು ಪರಿಹರಿಸುವುದು.

(6) ಪದಾಧಿಕಾರಿ ಅಥವಾ ಪದಾಧಿಕಾರಿಗಳು ಅಥವಾ ಸಂಸ್ಥೆ ಅಥವಾ ಸಂಸ್ಥೆಗಳು ಮತ್ತು ವಿಶ್ವವಿದ್ಯಾಲಯದ ಯಾವುದೇ ಇತರ ಪದಾಧಿಕಾರಿ ಅಥವಾ ಸಂಸ್ಥೆಗಳ ನಡುವೆ ಸಂಘರ್ಷಗಳು ಉಂಟಾದಲ್ಲಿ ಆಗ ಆ ವಿವಾದವನ್ನು ಕುಲಾಧಿಪತಿಯವರ ಪರ್ಯಾಲೋಚನೆಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿವಾದದ ಸಂದರ್ಭದಲ್ಲಿ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

15 ಕುಲಪತಿಗಳು.– (1) (2)ನೇ ಉಪಪ್ರಕರಣದ ಉಪಬಂಧಗಳಿಗೆ ಅನುಸಾರವಾಗಿ ನಾಮನಿರ್ದೇಶಕ ಸಮಿತಿಯು ಶಿಫಾರಸ್ಸು ಮಾಡಿದ ಮೂರು ವ್ಯಕ್ತಿಗಳ ಪೈಕಿ ಒಬ್ಬರನ್ನು ಕುಲಪತಿಗಳಾಗಿ, ಶಾಸನಗಳಲ್ಲಿ ನಿಯಮಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರು ನೇಮಿಸತಕ್ಕದ್ದು.

(2) (1)ನೇ ಉಪಪ್ರಕರಣದಲ್ಲಿ ಹೇಳಿರುವ ನಾಮನಿರ್ದೇಶಕ ಸಮಿತಿಯಲ್ಲಿ ಈ ಮುಂದಿನ ವ್ಯಕ್ತಿಗಳು ಇರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು ನಾಮನಿರ್ದೇಶಿಸಿದ ಒಬ್ಬ ವ್ಯಕ್ತಿ;

(ii) ಪ್ರಬಂಧಕ ಮಂಡಳಿಯು ನಾಮ ನಿರ್ದೇಶಿಸಿದ ಇಬ್ಬರು ವ್ಯಕ್ತಿಗಳು, ಇವರಲ್ಲಿ ಒಬ್ಬರನ್ನು ಪ್ರಬಂಧಕ ಮಂಡಳಿಯು ಸಮಿತಿಯ ಸಂಚಾಲಕರೆಂದು ನಾಮನಿರ್ದೇಶಿಸತಕ್ಕದ್ದು.

(3) ನಾಮನಿರ್ದೇಶಕ ಸಮಿತಿಯು ಅರ್ಹತೆಯ ಆಧಾರದ ಮೇಲೆ ಕುಲಪತಿಯ ಹುದ್ದೆಗೆ ಸೂಕ್ತ ವ್ಯಕ್ತಿಗಳೆಂದು ಮೂರು ವ್ಯಕ್ತಿಗಳ ಹೆಸರನ್ನು ಶಿಫಾರಸ್ಸು ಮಾಡತಕ್ಕದ್ದು ಮತ್ತು ಅದನ್ನು ಪ್ರತಿಯೊಬ್ಬ ವ್ಯಕ್ತಿಯ ವಿದ್ಯಾರ್ಹತೆ ಮತ್ತಿತರ ವಿಶಿಷ್ಟ ಪ್ರಶಸ್ತಿಗಳನ್ನು ತಿಳಿಸುವ ಒಂದು ಸಂಕ್ಷಿಪ್ತ ವರದಿಯೊಂದಿಗೆ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು.

(4) ಕುಲಪತಿಯವರು ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಾಹಕ ಮತ್ತು ಶೈಕ್ಷಣಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣವನ್ನು ಚಲಾಯಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯದ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೊಳಿಸತಕ್ಕದ್ದು.

(5) ಶಿಕ್ಷಕರ ನೇಮಕಾತಿಯನ್ನು ಹೊರತುಪಡಿಸಿ ಕೂಡಲೇ ಕ್ರಮವನ್ನು ಕೈಗೊಳ್ಳಬೇಕಾದ ತುರ್ತು ಸ್ವರೂಪದ ಯಾವುದೇ ಇತರ ವಿಷಯಗಳಲ್ಲಿ ಮತ್ತು ಅದನ್ನು ಈ ಅಧಿನಿಯಮದ ಅಡಿಯಲ್ಲಿ ಅಥವಾ ವಿಶ್ವವಿದ್ಯಾಲಯವು ಇದಕ್ಕಾಗಿ ಅಧಿಕೃತಗೊಳಿಸಿದ್ದ ಯಾವೊಬ್ಬ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ಇತರ ನಿಕಾಯವು ಕೂಡಲೇ ಕ್ರಮಕೈಗೊಳ್ಳುವುದು ಸಾಧ್ಯವಿರದಿರುವಾಗ ಕುಲಪತಿಯವರು ತಾನು ಸೂಕ್ತವೆಂದು ಭಾವಿಸಬಹುದಾದಂತಹ ಕ್ರಮವನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆದು ಕೈಗೊಳ್ಳತಕ್ಕದ್ದು.

(6) ಕುಲಪತಿಯವರು ಶಾಸನಗಳು ಅಥವಾ ನಿಯಮಗಳಲ್ಲಿ ಹೇಳಲಾದಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(7) ಕುಲಪತಿಯವರ ಸೇವೆಗಳನ್ನು ಪ್ರಬಂಧಕ ಮಂಡಳಿಯ ಅನುಮೋದನೆಯೊಂದಿಗೆ, ಕುಲಾಧಿಪತಿಯು ಸಹಜ ನ್ಯಾಯದ ತತ್ವಗಳನ್ನು ಅನುಸರಿಸಿದ ನಂತರ ಮತ್ತು ಶಿಸ್ತಿನ ಆಧಾರದ ಮೇಲೆ ಅಂತ್ಯಗೊಳಿಸುವ ಸಂದರ್ಭವೂ ಸೇರಿದಂತೆ ಪ್ರಕರಣದ ಬಗ್ಗೆ ಕುಲಪತಿಯು ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡಿದ ತರುವಾಯ ಆತನ ಸೇವೆಯನ್ನು ಕುಲಾಧಿಪತಿಯವರು ಅಂತ್ಯಗೊಳಿಸಬಹುದು.

(8) ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಸಂದರ್ಶಕರು ಮತ್ತು ಕುಲಾಧಿಪತಿಯವರು ಇಬ್ಬರೂ ಹಾಜರಿರದ ಸಂದರ್ಭದಲ್ಲಿ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**16. ಸಹಕುಲಪತಿಗಳು.**– ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಮೂರು ಜನರನ್ನು ಮೀರದಂತೆ ಸಹಕುಲಪತಿಗಳನ್ನು ಶಾಸನಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**17. ವಿದ್ಯಾ ವಿಭಾಗಗಳ ಡೀನ್‌ಗಳು.–** ವಿದ್ಯಾ ವಿಭಾಗಗಳ ಡೀನ್‌ಗಳನ್ನು ಕುಲಪತಿಯವರು ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಶಾಸನಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**18. ಕುಲಸಚಿವರು.–**(1) ಕುಲಪತಿಯವರು, ಶಾಸನಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರ ಲಿಖಿತ ಅನುಮೋದನೆಯೊಡನೆ ಕುಲಸಚಿವರನ್ನು ನೇಮಿಸತಕ್ಕದ್ದು.

(2) ಶಾಸನಗಳಲ್ಲಿ ಪರಿಭಾಷಿಸಿರುವಂಥ ಎಲ್ಲಾ ಕರಾರುಗಳನ್ನು ವಿಶ್ವವಿದ್ಯಾಲಯದ ಪರವಾಗಿ ಕುಲಸಚಿವರು ಮಾಡಿಕೊಳ್ಳತಕ್ಕದ್ದು ಮತ್ತು ಅದಕ್ಕೆ ಸಹಿ ಹಾಕತಕ್ಕದ್ದು.

(3) ಕುಲಸಚಿವರು ವಿಶ್ವವಿದ್ಯಾಲಯದ ಪರವಾಗಿ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಕುಲಾಧಿಪತಿಯವರು ಮತ್ತು ಕುಲಪತಿಯವರು ಕಾಲದಿಂದ ಕಾಲಕ್ಕೆ ಅಗತ್ಯಪಡಿಸಬಹುದಾದಂಥ ಅಥವಾ ಶಾಸನಗಳಿಂದ ನಿಯಮಿಸಬಹುದಾದಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು ವಿಶ್ವವಿದ್ಯಾಲಯದ ದಾಖಲೆಗಳು ಮತ್ತು ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು, ಕುಲಪತಿಯವರು ಅಥವಾ ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿತಕ್ಕದ್ದು.

**19. ಹಣಕಾಸು ಅಧಿಕಾರಿ.–** ಹಣಕಾಸು ಅಧಿಕಾರಿಯನ್ನು ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಶಾಸನಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಗೊಳಿಸತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**20. ಇತರ ಅಧಿಕಾರಿಗಳು.–** ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ ನೇಮಕಾತಿಯ ವಿಧಾನ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅಧಿಕಾರಗಳು ಮತ್ತು ಕರ್ತವ್ಯಗಳು ಶಾಸನಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ – IV

## ವಿಶ್ವವಿದ್ಯಾಲಯದ ಪ್ರಾಧಿಕಾರಗಳು

**21. ವಿಶ್ವವಿದ್ಯಾಲಯದ ಪ್ರಾಧಿಕಾರಗಳು.–** ಈ ಮುಂದಿನವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:–

(i) ಪ್ರಬಂಧಕ ಮಂಡಳಿ;

(ii) ಆಡಳಿತ ಮಂಡಳಿ;

(iii) ಪ್ರಶಿಕ್ಷಣ ಪರಿಷತ್ತು;

(iv) ಸಂಶೋಧನಾ ಪರಿಷತ್ತು;

(v) ದೂರ ಶಿಕ್ಷಣ ಸಮಿತಿ;

(vi) ಹಣಕಾಸು ಸಮಿತಿ; ಮತ್ತು

(vii) ವಿಶ್ವವಿದ್ಯಾಲಯದ ಪ್ರಾಧಿಕಾರಗಳೆಂದು ಶಾಸನಗಳ ಮೂಲಕ ಘೋಷಿಸಬಹುದಾದಂತಹ ಇತರ ಪ್ರಾಧಿಕಾರಗಳು.

22. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು.– (1) ಪ್ರಬಂಧಕ ಮಂಡಳಿಯು ಈ ಮುಂದಿನವರುಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು – ಅಧ್ಯಕ್ಷರು;

(ii) ಕುಲಪತಿಯವರು – ಸದಸ್ಯರು;

(iii) ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ;

(iv) ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ;

(v) ವಿಶ್ವವಿದ್ಯಾಲಯ ಅನುದಾನ ಆಯೋಗದಿಂದ ನಾಮನಿರ್ದೇಶಿತರಾದ ಒಬ್ಬ ಖ್ಯಾತ ಶಿಕ್ಷಣ ತಜ್ಞ;

(vi) ಸಂದರ್ಶಕರು ಶಿಫಾರಸ್ಸು ಮಾಡಿದ ಹೆಸರುಗಳ ಪಟ್ಟಿಯಿಂದ, ಆದಷ್ಟೂ ಒಬ್ಬ ಮಹಿಳೆಗೇ ಆದ್ಯತೆ ನೀಡಿ, ಆಯ್ಕೆ ಮಾಡಿದ ಒಬ್ಬ ಖ್ಯಾತ ಶಿಕ್ಷಣ ತಜ್ಞರು ಮತ್ತು ವಿದ್ವಾಂಸರು;

(vii) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಮೂರು ವ್ಯಕ್ತಿಗಳು;

(2) ಕುಲಸಚಿವರು ಮತ್ತು ಸಹ ಕುಲಪತಿಯವರು ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗೂ ಮತ ನೀಡಿಕೆ ಹಕ್ಕಿರದ ಆಹ್ವಾನಿತರಾಗಿರತಕ್ಕದ್ದು.

(3) ಪ್ರಬಂಧಕ ಮಂಡಳಿಯ ಸದಸ್ಯರ ಪದಾವಧಿ, ಸರ್ಕಾರದಿಂದ ನಾಮನಿರ್ದೇಶಿತರಾದ ಇಬ್ಬರು ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ನೇಮಕಾತಿ, ನವೀಕರಣ ಮತ್ತು ತೆಗೆದುಹಾಕುವುದು ಮುಂತಾದವುಗಳು ಶಾಸನಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಾಧಿಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರ ಅನುಪಸ್ಥಿತಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದ ಯಾರಾದರೂ ಒಬ್ಬರು ಹಾಗೂ ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡಿರದ ಸಂದರ್ಭದಲ್ಲಿ, ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಿಗೆ, ಅಂಥ ಸಭೆಯಲ್ಲಿ ಹಾಜರಾಗುವ ಮತ್ತು ಮತದಾನ ನೀಡುವ ಮೂರು ಜನ ಸದಸ್ಯರು ಗಣಪೂರ್ತಿ (ಕೋರಂ) ಆಗಿರತಕ್ಕದ್ದು:

ಪರಂತು, ಪ್ರಬಂಧಕ ಮಂಡಳಿಯ ಯಾವುದೇ ಸಭೆಯ ಕೋರಂ ಪೂರ್ಣವಾಗಬೇಕಾದರೆ ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಿರುವುದು ಮತ್ತು ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ನಾಮನಿರ್ದೇಶಿತರು ಹಾಜರಾಗದೇ ಇದ್ದಾಗ ಕುಲಪತಿಯವರು ಹಾಜರಿರುವುದು ಯಾವಾಗಲೂ ಅವಶ್ಯವಾಗಿರತಕ್ಕದ್ದು.

(6) ಒಂದು ಕಾರ್ಯಸೂಚಿ ವಿಷಯದ ಪರವಾಗಿ ಕುಲಾಧಿಪತಿಯವರು ತಮ್ಮ ಸಮ್ಮತಿ ಸೂಚಕ ಮತ ನೀಡಿದಾಗ ಅದಕ್ಕನುಸಾರವಾಗಿ ಹೊರತು, ಪ್ರಬಂಧಕ ಮಂಡಳಿಯು ತನ್ನ ಸಭೆಯಲ್ಲಿ ಯಾವುದೇ ಕಾರ್ಯಸೂಚಿ

ವಿಷಯದ ಸಂಬಂಧದಲ್ಲಿ ಯಾವುದೇ ನಿರ್ಣಯವನ್ನು ಅಂಗೀಕರಿಸತಕ್ಕದ್ದಲ್ಲ ಅಥವಾ ತೀರ್ಮಾನವನ್ನು ತೆಗೆದುಕೊಳ್ಳತಕ್ಕದ್ದಲ್ಲ.

(7) ಪ್ರಬಂಧಕ ಮಂಡಳಿಯ ಸಭೆಯಲ್ಲಿ ಭಿನ್ನಾಭಿಪ್ರಾಯ ಉಂಟಾದಲ್ಲಿ ಆ ವಿಷಯವನ್ನು ತೀರ್ಮಾನಕ್ಕಾಗಿ ಪ್ರಾಯೋಜಕ ಸಂಸ್ಥೆಗೆ ಕಳುಹಿಸತಕ್ಕದ್ದು ಮತ್ತು ಸದರಿ ವಿಷಯದ ಬಗ್ಗೆ ಪ್ರಾಯೋಜಕ ಸಂಸ್ಥೆಯ ನಿರ್ಣಯವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

(8) ಪ್ರಬಂಧಕ ಮಂಡಳಿಯು ವಿಶ್ವವಿದ್ಯಾಲಯದ ಪ್ರಧಾನ ಪ್ರಬಂಧಕ ಸಂಸ್ಥೆಯಾಗಿರತಕ್ಕದ್ದು ಮತ್ತು ಅದು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಕಗೊಳಿಸುವುದು;

(ii) ವಿಶ್ವವಿದ್ಯಾಲಯವು ಅನುಸರಿಸಬೇಕಾದ ಕಾರ್ಯನೀತಿಗಳನ್ನು ರಚಿಸುವುದು;

(iii) ಈ ಅಧಿನಿಯಮದ ಅಥವಾ ಶಾಸನಗಳ ಅಥವಾ ನಿಯಮಗಳ ಉಪಬಂಧಗಳಿಗೆ ಅನುಗುಣವಾಗಿ ಇತರ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ತೀರ್ಮಾನಗಳನ್ನು ಪುನರೀಕ್ಷಿಸುವುದು;

(iv) ವಿಶ್ವವಿದ್ಯಾಲಯದ ಆಯವ್ಯಯ ಮತ್ತು ವಾರ್ಷಿಕ ವರದಿಗಳನ್ನು ಅನುಮೋದಿಸುವುದು;

(v) ಹೊಸ ಅಥವಾ ಹೆಚ್ಚುವರಿ ಶಾಸನಗಳನ್ನು ರಚಿಸುವುದು ಅಥವಾ ಈಗಾಗಲೇ ಇರುವ ಶಾಸನಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವುದು ಅಥವಾ ನಿರಸನಗೊಳಿಸುವುದು;

(vi) ವಿಶ್ವವಿದ್ಯಾಲಯವನ್ನು ಸ್ವಯಂಸಮಾಪನಗೊಳಿಸುವ ನಿರ್ಧಾರವನ್ನು ತೆಗೆದುಕೊಳ್ಳುವುದು;

(vii) ಸರ್ಕಾರಕ್ಕೆ ಸಲ್ಲಿಸುವ ಪ್ರಸ್ತಾವಗಳನ್ನು ಅನುಮೋದಿಸುವುದು;

(viii) ವಿಶ್ವವಿದ್ಯಾಲಯದ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕೆ ಅಪೇಕ್ಷಣೀಯವೆಂದು ಕಂಡುಬರುವಂಥ ತೀರ್ಮಾನಗಳನ್ನು ಮತ್ತು ಕ್ರಮಗಳನ್ನು ಕೈಗೊಳ್ಳುವುದು.

(9) ಪ್ರಬಂಧಕ ಮಂಡಳಿಯು ಶಾಸನಗಳಲ್ಲಿ ನಿಯಮಿಸಬಹುದಂಥ ಸಮಯ ಮತ್ತು ಸ್ಥಳದಲ್ಲಿ ಸಭೆ ಸೇರತಕ್ಕದ್ದು.

**23. ಆಡಳಿತ ಮಂಡಳಿ.-** (1) ಆಡಳಿತ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಗಳು;

(ii) ಸಹಕುಲಪತಿಗಳು;

(iii) ಕುಲಸಚಿವರು;

(iv) ಪ್ರಾಯೋಜಕ ಸಂಸ್ಥೆಯ ಇಬ್ಬರು ನಾಮನಿರ್ದೇಶಿತರು;

(v) ಕುಲಪತಿಗಳು ನಾಮನಿರ್ದೇಶಿಸಬಹುದಾದಂಥ ವಿದ್ಯಾವಿಭಾಗಗಳ ಇಬ್ಬರು ಡೀನ್‌ಗಳು;

(2) ಕುಲಪತಿಯವರು ಆಡಳಿತ ಮಂಡಳಿಯ ಅಧ್ಯಕ್ಷರಾಗಿರತಕ್ಕದ್ದು ಮತ್ತು ಕುಲಸಚಿವರು ಆಡಳಿತ ಮಂಡಳಿಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ಆಡಳಿತ ಮಂಡಳಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳು ಶಾಸನಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ಆಡಳಿತ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು ಹಾಗೂ ಕುಲಪತಿಯವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೇ ಇದ್ದ ಸಂದರ್ಭದಲ್ಲಿ ಇತರ ಯಾವುದೇ ಸದಸ್ಯರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ಆಡಳಿತ ಮಂಡಳಿಯ ಸಭೆಯಲ್ಲಿ ಯಾವುದೇ ವಿಷಯವನ್ನು ಕುರಿತು ಭಿನ್ನಾಭಿಪ್ರಾಯ ಉಂಟಾದಲ್ಲಿ ಸದರಿ ವಿಷಯವನ್ನು ಕುಲಾಧಿಪತಿಯವರಿಗೆ ತೀರ್ಮಾನಕ್ಕಾಗಿ ಕಳುಹಿಸತಕ್ಕದ್ದು ಮತ್ತು ಆ ವಿಷಯದ ಬಗ್ಗೆ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**24. ಪ್ರಶಿಕ್ಷಣ ಪರಿಷತ್ತು.-** (1) ಪ್ರಶಿಕ್ಷಣ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಕಾರ್ಯದರ್ಶಿಗಳು

(iv) ಶಾಸನಗಳಲ್ಲಿ ನಿರ್ದಿಷ್ಟಪಡಿಸಬಹುದಾದಂಥ ಇತರ ಸದಸ್ಯರು.

(2) ಪ್ರಶಿಕ್ಷಣ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ವಿದ್ಯಾ ವಿಷಯಕ ಸಂಸ್ಥೆಯಾಗಿರತಕ್ಕದ್ದು ಮತ್ತು ಈ ಅಧಿನಿಯಮದ ಉಪಬಂಧಗಳು, ಶಾಸನಗಳು, ವಿನಿಯಮಗಳು ಹಾಗೂ ನಿಯಮಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**25. ಸಂಶೋಧನಾ ಪರಿಷತ್ತು.-** (1) ಸಂಶೋಧನಾ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಸಂಶೋಧನಾ ಸಮಿತಿಯಾಗಿರತಕ್ಕದ್ದು ಹಾಗೂ ಸಂಶೋಧನಾ ಕ್ಷೇತ್ರಗಳಲ್ಲಿ ಯಾವುದಕ್ಕೆ ಆದ್ಯತೆಯನ್ನು ನೀಡಲೇಬೇಕೆಂಬುದೂ ಒಳಗೊಂಡಂತೆ ವಿಶ್ವವಿದ್ಯಾಲಯವು ಯಾವ ರೀತಿಯ ಸಂಶೋಧನೆ ಕೈಗೊಳ್ಳಬೇಕೆಂಬ ಬಗ್ಗೆ ಒಂದು ವ್ಯಾಪಕವಾದ ಪರಿಪೂರ್ಣ ಭವಿಷ್ಯದ್ ದೃಷ್ಟಿಯನ್ನು ಒದಗಿಸತಕ್ಕದ್ದು. ಸಂಶೋಧನಾ ಪರಿಷತ್ತು ಈ ಅಧಿನಿಯಮದ ಉಪಬಂಧಗಳು, ಶಾಸನಗಳು, ವಿನಿಯಮಗಳು ಮತ್ತು ನಿಯಮಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಸಂಶೋಧನಾ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ಸಂಶೋಧನಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಸಂಶೋಧನೆಯ ಡೀನ್ – ಕಾರ್ಯದರ್ಶಿಗಳು

(iv) ಎಲ್ಲಾ ವಿದ್ಯಾ ವಿಭಾಗದ ಡೀನ್‌ಗಳು – ಸದಸ್ಯರು

(v) ಶಾಸನಗಳಲ್ಲಿ ನಿರ್ದಿಷ್ಟಪಡಿಸಬಹುದಾದಂಥ ಇತರ ಸದಸ್ಯರು.

**26. ದೂರ ಶಿಕ್ಷಣ ಸಮಿತಿ.-** (1) ದೂರ ಶಿಕ್ಷಣ ಸಮಿತಿಯು ವಿಶ್ವವಿದ್ಯಾಲಯದ ಪ್ರಧಾನ ಕ್ಯಾಂಪಸಿಗೆ ಆಗಮಿಸಬಹುದಾದ ಅಥವಾ ಆಗಮಿಸದೇ ಇರಬಹುದಾದ ಬಹುಸಂಖ್ಯಾತ ವಿದ್ಯಾ ಜಿಜ್ಞಾಸುಗಳಿಗೆ ಸಹವರ್ತಿ ಸಂಶೋಧನೆ

ಕೆಲಸದ ಸಮೇತ ದೂರ ಶಿಕ್ಷಣವನ್ನು ಒದಗಿಸುವ ಪ್ರಧಾನ ಸಂಸ್ಥೆಯಾಗಿರತಕ್ಕದ್ದು. ದೂರ ಶಿಕ್ಷಣ ಸಮಿತಿಯು ಈ ಅಧಿನಿಯಮದ ಉಪಬಂಧಗಳು, ಶಾಸನಗಳು, ವಿನಿಯಮಗಳು ಮತ್ತು ನಿಯಮಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ದೂರ ಶಿಕ್ಷಣ ಯೋಜನೆಗಳು/ಕಾರ್ಯನೀತಿಗಳ ವಿಷಯಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ದೂರ ಶಿಕ್ಷಣ ಸಮಿತಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ :-

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಕಾರ್ಯದರ್ಶಿ

(iv) ಶಾಸನಗಳಲ್ಲಿ ನಿರ್ದಿಷ್ಟಪಡಿಸಬಹುದಾದಂಥ ಇತರ ಸದಸ್ಯರು.

**27. ಹಣಕಾಸು ಸಮಿತಿ.–** (1) ಹಣಕಾಸು ಸಮಿತಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ.–

(i) ಕುಲಾಧಿಪತಿಯವರು ಅಥವಾ ಅವರ ನಾಮನಿರ್ದೇಶಿತರು – ಅಧ್ಯಕ್ಷರು

(ii) ಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಸದಸ್ಯರು

(iv) ಹಣಕಾಸು ಅಧಿಕಾರಿ – ಕಾರ್ಯದರ್ಶಿ

(v) ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು – ಸದಸ್ಯರು; ಮತ್ತು

(vi) ಶಾಸನಗಳಲ್ಲಿ ನಿರ್ದಿಷ್ಟಪಡಿಸಬಹುದಾದಂಥ ಇತರ ಸದಸ್ಯರು.

(2) ಹಣಕಾಸು ಸಮಿತಿಯು ಹಣಕಾಸಿನ ವಿಷಯಗಳ ಜವಾಬ್ದಾರಿಯನ್ನು ಹೊಂದಿರುವ ವಿಶ್ವವಿದ್ಯಾಲಯದ ಪ್ರಧಾನ ಹಣಕಾಸು ಸಂಸ್ಥೆಯಾಗಿರತಕ್ಕದ್ದು ಹಾಗೂ ಅದು ಈ ಅಧಿನಿಯಮ, ನಿಯಮಗಳು ಮತ್ತು ಶಾಸನಗಳ ಉಪಬಂಧಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಹಣಕಾಸು ವಿಷಯಗಳ ಸಮನ್ವಯಗೊಳಿಸತಕ್ಕದ್ದು ಮತ್ತು ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**28. ಇತರ ಪ್ರಾಧಿಕಾರಗಳು.–** ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ರಚನೆ, ಅಧಿಕಾರಗಳು ಹಾಗೂ ಪ್ರಕಾರ್ಯಗಳು ಶಾಸನಗಳಿಂದ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

**29. ಖಾಲಿ ಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಕಾರ್ಯ ಅಥವಾ ವ್ಯವಹರಣೆಗಳು ಕೇವಲ ಅದರಲ್ಲಿ ಯಾವುದೇ ಖಾಲಿ ಸ್ಥಾನ ಇದೆ ಎಂಬ ಕಾರಣದಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣದಿಂದ ಅಸಿಂಧುವಾಗತಕ್ಕದ್ದಲ್ಲ.

**30. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು.–** (1) ಯಾವುವೇ ಕಾರ್ಯಸೂಚಿ ವಿಷಯಗಳನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆಯದೇ ಪ್ರಬಂಧಕ ಮಂಡಳಿಯ ಅಥವಾ ಆಡಳಿತ ಮಂಡಳಿಯ ಅಥವಾ ಯಾವುದೇ ಸಮಿತಿಯ ಸಭೆಗಳ ಕಾರ್ಯಸೂಚಿ ವಿಷಯಗಳಲ್ಲಿ ಚರ್ಚೆಗಾಗಿ ಸೇರಿಸತಕ್ಕದ್ದಲ್ಲ ಅಥವಾ ಚರ್ಚೆಗೆ ತೆಗೆದುಕೊಳ್ಳತಕ್ಕದ್ದಲ್ಲ ಮತ್ತು ತೀರ್ಮಾನಿಸತಕ್ಕದ್ದಲ್ಲ.

(2) ಈ ಉಪಬಂಧವನ್ನು ಪಾಲಿಸದ ಯಾವುದೇ ಸಂದರ್ಭದಲ್ಲಿ ಕುಲಾಧಿಪತಿಯವರು ವಿಶ್ವವಿದ್ಯಾಲಯದ ಯಾವುದೇ ಪದಾಧಿಕಾರಿ ಅಥವಾ ಪದಾಧಿಕಾರಿಗಳು ಅಥವಾ ಸಂಸ್ಥೆ ಅಥವಾ ಸಂಸ್ಥೆಗಳು ಈ ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ತೆಗೆದುಕೊಂಡ ಎಲ್ಲಾ ತೀರ್ಮಾನಗಳನ್ನು ವಿಪರ್ಯಯಗೊಳಿಸುವ ಮೂಲಕ ಪರಿಹಾರ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಅಧಿಕಾರವನ್ನು ಹೊಂದಿರತಕ್ಕದ್ದು ಮತ್ತು ಹಾಗೆ ಪರಿಹಾರ ಕ್ರಮ ಕೈಗೊಂಡ ಮೇಲೆ ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ವಿಶ್ವವಿದ್ಯಾಲಯದ ಪದಾಧಿಕಾರಿ ಅಥವಾ ಪದಾಧಿಕಾರಿಗಳು ಅಥವಾ ಸಂಸ್ಥೆ ಅಥವಾ ಸಂಸ್ಥೆಗಳು ಕೈಗೊಂಡಿದ್ದ ಅಂಥ ಎಲ್ಲಾ ಕ್ರಮಗಳು, ಮೊದಲಿನಿಂದಲೂ ಶೂನ್ಯ ಮತ್ತು ಅಕೃತ ಎಂದು ಭಾವಿಸತಕ್ಕದ್ದು ಹಾಗೂ ತತ್ಪರಿಣಾಮವಾಗಿ, ಉಪಬಂಧ ಪಾಲಿಸದೇ ಇದ್ದ ವಿಷಯ ಅಥವಾ ನಿರ್ಧಾರದ ಸಂಬಂಧದಲ್ಲಿ ಅದಕ್ಕೆ ಮುಂಚೆ ಇದ್ದ ವಸ್ತುಸ್ಥಿತಿಯೇ ಮುಂದುವರಿಯತಕ್ಕದ್ದು.

## ಅಧ್ಯಾಯ – V

## ಶಾಸನಗಳು ಮತ್ತು ವಿನಿಯಮಗಳು

**31. ಶಾಸನಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಶಾಸನಗಳು ವಿಶ್ವವಿದ್ಯಾಲಯಕ್ಕೆ ಹಾಗೂ ಸಿಬ್ಬಂದಿಗೆ ಸಂಬಂಧಪಟ್ಟ ಯಾವುವೇ ವಿಷಯಗಳಿಗೆ ಸಂಬಂಧಪಟ್ಟಂತೆ ಈ ಮುಂದಿನಂತೆ ಉಪಬಂಧ ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಕಾರ್ಯಕಲಾಪಗಳನ್ನು ನಡೆಸುವ ಮತ್ತು ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸದಿರುವ ಸಂಸ್ಥೆಗಳ ರಚನೆಯ ಕಾರ್ಯವಿಧಾನ;

(ii) ಶಾಶ್ವತ ಶಾಸನಬದ್ಧ ದತ್ತಿ ನಿಧಿ, ವಿಶ್ವವಿದ್ಯಾಲಯ ದತ್ತಿ ನಿಧಿ, ಸಾಮಾನ್ಯ ನಿಧಿ ಹಾಗೂ ಅಭಿವೃದ್ಧಿ ನಿಧಿಗಳ ನಿರ್ವಹಣೆ;

(iii) ಕುಲಪತಿಗಳು, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರ ನೇಮಕಾತಿಯ ನಿಬಂಧನೆಗಳು ಹಾಗೂ ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಪ್ರಕಾರ್ಯಗಳು;

(iv) ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ, ಶಿಕ್ಷಕರ ಮತ್ತು ನೌಕರರ ನೇಮಕಾತಿ ವಿಧಾನ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(v) ವಿಶ್ವವಿದ್ಯಾಲಯ ಹಾಗೂ ಅದರ ಅಧಿಕಾರಿಗಳು, ವಿದ್ಯಾವಿಭಾಗದ (ಫ್ಯಾಕಲ್ಟಿ) ಸದಸ್ಯರು, ನೌಕರರು ಹಾಗೂ ವಿದ್ಯಾರ್ಥಿಗಳ ನಡುವೆ ಉಂಟಾದ ವಿವಾದಗಳನ್ನು ಪರಿಹರಿಸುವ ವಿಧಾನ;

(vi) ವಿಭಾಗಗಳು ಮತ್ತು ವಿದ್ಯಾವಿಭಾಗಗಳ (ಫ್ಯಾಕಲ್ಟಿಗಳ) ಸೃಜನೆ, ರದ್ಧತಿ ಅಥವಾ ಪುನಾರಚನೆ;

(vii) ಇತರ ವಿಶ್ವವಿದ್ಯಾಲಯಗಳು ಅಥವಾ ಉನ್ನತ ಶಿಕ್ಷಣ ಸಂಸ್ಥೆಗಳ ಜೊತೆಯಲ್ಲಿ ಸಹಕರಿಸಬೇಕಾದ ರೀತಿ;

(viii) ಗೌರವ ಪದವಿಗಳ ನೀಡಿಕೆಯ ಕಾರ್ಯವಿಧಾನ;

(ix) ಉಚಿತ ಶಿಕ್ಷಣ ಮತ್ತು ವಿದ್ಯಾರ್ಥಿವೇತನ ಮಂಜೂರಾತಿಗೆ ಸಂಬಂಧಿಸಿದ ಉಪಬಂಧಗಳು;

(x) ವಿವಿಧ ವ್ಯಾಸಂಗ ಕ್ರಮಗಳಲ್ಲಿನ ಸೀಟುಗಳ ಸಂಖ್ಯೆ ಮತ್ತು ಅಂಥ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಕಾರ್ಯವಿಧಾನ;

(xi) ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಶುಲ್ಕ;

(xii) ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಉಚಿತ ಶಿಕ್ಷಣ, ಪದಕಗಳು ಹಾಗೂ ಬಹುಮಾನಗಳನ್ನು ಪ್ರಾರಂಭಿಸುವುದು;

(xiii) ಹುದ್ದೆಗಳ ಸೃಜನೆ ಮತ್ತು ರದ್ದತಿಯ ಕಾರ್ಯವಿಧಾನ;

(xiv) ನಿರ್ದಿಷ್ಟಪಡಿಸಬಹುದಾದ ಇತರ ವಿಷಯಗಳು.

32. **ಶಾಸನಗಳ ರಚನೆ ವಿಧಾನ.**– (1) ಆಡಳಿತ ಮಂಡಳಿಯು ರಚಿಸಿದ ಮೊದಲ ಶಾಸನಗಳನ್ನು ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಆಡಳಿತ ಮಂಡಳಿಯು ಸಲ್ಲಿಸಿದ ಮೊದಲ ಶಾಸನಗಳನ್ನು ಪ್ರಬಂಧಕ ಮಂಡಳಿಯು ಪರಿಗಣಿಸತಕ್ಕದ್ದು ಹಾಗೂ ತಾನು ಅವಶ್ಯವೆಂದು ಭಾವಿಸಬಹುದಾಂಥ ಮಾರ್ಪಾಡುಗಳು, ಯಾವುದಾದರು ಇದ್ದಲ್ಲಿ, ಅವುಗಳೊಡನೆ ತನ್ನ ಅನುಮೋದನೆಯನ್ನು ನೀಡತಕ್ಕದ್ದು.

(3) ಪ್ರಬಂಧಕ ಮಂಡಳಿಯು ಶಾಸನಗಳ ಅನುಮೋದನೆಯ ವಿಷಯದಲ್ಲಿ ಮೂವತ್ತು ದಿನಗಳ ಒಳಗೇ ಯಾವುದೇ ತೀರ್ಮಾನವನ್ನು ಕೈಗೊಳ್ಳಲು ತಪ್ಪಿದಲ್ಲಿ ಅದನ್ನು ಪ್ರಬಂಧಕ ಮಂಡಳಿಯು ಅನುಮೋದಿಸಿದೆ ಎಂದು ಭಾವಿಸತಕ್ಕದ್ದು.

(4) ವಿಶ್ವವಿದ್ಯಾಲಯವು, ಪ್ರಬಂಧಕ ಮಂಡಳಿಯು ಅನುಮೋದಿಸಿದ ಮೊದಲ ಶಾಸನಗಳನ್ನು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ಪ್ರಕಟಿಸತಕ್ಕದ್ದು ಮತ್ತು ತದನಂತರ ಮೊದಲ ಶಾಸನವು ಅದರ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

33. **ಶಾಸನಗಳ ತಿದ್ದುಪಡಿಯ ಅಧಿಕಾರ.**– ಪ್ರಬಂಧಕ ಮಂಡಳಿಯು ಹೊಸ ಅಥವಾ ಹೆಚ್ಚಿನ ಶಾಸನಗಳನ್ನು ರಚಿಸಬಹುದು ಅಥವಾ ಶಾಸನಗಳ ತಿದ್ದುಪಡಿ ಮಾಡಬಹುದು ಅಥವಾ ಅವನ್ನು ನಿರಸನಗೊಳಿಸಬಹುದು.

34. **ವಿನಿಯಮಗಳು.**– ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ವಿನಿಯಮಗಳು ಈ ಮುಂದಿನ ಯಾವುದೇ ಅಥವಾ ಎಲ್ಲಾ ವಿಷಯಗಳಿಗೆ ಉಪಬಂಧಗಳನ್ನು ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ವಿದ್ಯಾರ್ಥಿ ಪಟ್ಟಿಯಲ್ಲಿ ಅವರುಗಳ ದಾಖಲಾತಿ ಹಾಗೂ ಮುಂದುವರಿಕೆ;

(ii) ವಿಶ್ವವಿದ್ಯಾಲಯದ ಎಲ್ಲಾ ಪದವಿಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ನಿಗದಿಪಡಿಸತಕ್ಕ ವ್ಯಾಸಂಗ ಕ್ರಮಗಳು;

(iii) ಪದವಿಗಳ ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರದಾನ;

(iv) ಸಂಶೋಧನಾ ವೇತನ (ಫೆಲೋಶಿಪ್), ವಿದ್ಯಾರ್ಥಿವೇತನ, ಶಿಷ್ಯವೇತನ, ಪದಕಗಳು ಮತ್ತು ಬಹುಮಾನಗಳನ್ನು ನೀಡಲು ಷರತ್ತುಗಳು;

(v) ಪರೀಕ್ಷೆಗಳನ್ನು ನಡೆಸುವುದು ಹಾಗೂ ಪರೀಕ್ಷೆ ನಡೆಸುವ ಸಂಸ್ಥೆಗಳು, ಪರೀಕ್ಷಕರು, ಪರೀಕ್ಷಾ ಮೇಲ್ವಿಚಾರಕರು, ಟ್ಯಾಬುಲೇಟರ್‌ಗಳು ಮತ್ತು ಮಾಡರೇಟರ್‌ಗಳ ನೇಮಕಾತಿಯ ವಿಧಾನ ಮತ್ತು ನೇಮಕಾತಿ ಷರತ್ತುಗಳು;

(vi) ವಿಶ್ವವಿದ್ಯಾಲಯದ ಪರೀಕ್ಷೆಗಳಿಗೆ, ಪದವಿಗಳಿಗೆ ಹಾಗೂ ಇತರ ಶೈಕ್ಷಣಿಕ ಪ್ರಶಸ್ತಿಗಳಿಗೆ ಪ್ರವೇಶಕ್ಕೆ ವಿಧಿಸತಕ್ಕ ಶುಲ್ಕ;

(vii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನಲ್ಲಿ ವಿದ್ಯಾರ್ಥಿಗಳ ನಿವಾಸಕ್ಕಾಗಿ ಷರತ್ತುಗಳು:

(viii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಶಿಸ್ತು ಪಾಲನೆ;

(ix) ಈ ಅಧಿನಿಯಮದ ಅಡಿಯಲ್ಲಿನ ಶಾಸನಗಳಲ್ಲಿ ಉಪಬಂಧಿಸಬಹುದಾಂಥ ಇತರ ಎಲ್ಲಾ ವಿಷಯಗಳು.

**35. ವಿನಿಯಮಗಳ ರಚನೆ ವಿಧಾನ.–** ವಿನಿಯಮಗಳನ್ನು ಪ್ರಶಿಕ್ಷಣ ಪರಿಷತ್ತು ರಚಿಸತಕ್ಕದ್ದು ಹಾಗೂ ಆಡಳಿತ ಮಂಡಳಿಯು ಅನುಮೋದಿಸತಕ್ಕದ್ದು.

**36. ವಿನಿಯಮಗಳ ತಿದ್ದುಪಡಿಗೆ ಅಧಿಕಾರ.–** ಪ್ರಶಿಕ್ಷಣ ಪರಿಷತ್ತು ಆಡಳಿತ ಮಂಡಳಿಯ ವಿನಿಯಮ ಅನುಮೋದನೆಯೊಡನೆ ಹೊಸ ವಿನಿಯಮಗಳನ್ನು ಅಥವಾ ಹೆಚ್ಚುವರಿ ವಿನಿಯಮಗಳನ್ನು ರಚಿಸಬಹುದು ಅಥವಾ ವಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ನಿರಸನಗೊಳಿಸಬಹುದು.

**37. ಶುಲ್ಕ ನಿಯಂತ್ರಣ ಸಮಿತಿ.– (1)** ಪ್ರಬಂಧಕ ಮಂಡಳಿಯು ರಚಿಸಿದ ಒಂದು ಶುಲ್ಕ ನಿಯಂತ್ರಣ ಸಮಿತಿಯು ಇರತಕ್ಕದ್ದು. ಇದರಲ್ಲಿ ಉನ್ನತ ಶಿಕ್ಷಣದ ಪ್ರಭಾರದಲ್ಲಿರುವ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು ಅಥವಾ ಅವರ ನಾಮನಿರ್ದೇಶಿತರು ಒಬ್ಬ ಸದಸ್ಯರಾಗಿರತಕ್ಕದ್ದು ಮತ್ತು ಕುಲಾಧಿಪತಿಯವರು ಸಮಿತಿಯ ಅಧ್ಯಕ್ಷರಾಗಿರತಕ್ಕದ್ದು ಹಾಗೂ ಅಧ್ಯಕ್ಷರು ನಾಮನಿರ್ದೇಶಿಸಿದ ಇತರ ಮೂರು ಜನ ಸದಸ್ಯರು ಇರತಕ್ಕದ್ದು.

(2) ಸಮಿತಿಯು ಎಲ್ಲಾ ಶೈಕ್ಷಣಿಕ ಕಾರ್ಯಕ್ರಮಗಳಿಗೆ ಶುಲ್ಕದ ಸ್ವರೂಪವನ್ನು ನಿಗದಿಪಡಿಸುವುದಕ್ಕಾಗಿ ಶಾಸನಗಳಿಗೆ ಸುಸಂಗತವಾದ ಕಾರ್ಯ ವಿಧಾನ ಮತ್ತು ಪದ್ಧತಿಗಳನ್ನು ರೂಪಿಸತಕ್ಕದ್ದು.

(3) ಸಮಿತಿಯು ಹಾಗೆ ಪ್ರಸ್ತಾಪಿಸಿದ ಶುಲ್ಕದ ಸ್ವರೂಪವನ್ನು ಪ್ರಬಂಧಕ ಮಂಡಳಿಯ ಮುಂದೆ ಅದರ ಒಪ್ಪಿಗೆಗಾಗಿ ಮಂಡಿಸತಕ್ಕದ್ದು.

## ಅಧ್ಯಾಯ – VI

### ಸಂಕೀರ್ಣ

**38. ನೌಕರರ ಸೇವಾ ಷರತ್ತುಗಳು.– (1)** ಪ್ರತಿಯೊಬ್ಬ ನೌಕರನು ಲಿಖಿತ ಕರಾರನ್ನು ಬರೆದುಕೊಟ್ಟು ನೇಮಕಗೊಳ್ಳತಕ್ಕದ್ದು ಮತ್ತು ಅದನ್ನು ವಿಶ್ವವಿದ್ಯಾಲಯದಲ್ಲಿ ಇಟ್ಟುಕೊಳ್ಳತಕ್ಕದ್ದು ಹಾಗೂ ಅದರ ಪ್ರತಿಯನ್ನು ಸಂಬಂಧಪಟ್ಟ ನೌಕರನಿಗೆ ನೀಡತಕ್ಕದ್ದು.

(2) ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಶಾಸನಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಕಾರ್ಯವಿಧಾನಗಳ ಅನುಸಾರವಾಗಿ ತೆಗೆದುಕೊಳ್ಳತಕ್ಕದ್ದು.

(3) ವಿಶ್ವವಿದ್ಯಾಲಯ ಮತ್ತು ನೌಕರನ ಮಧ್ಯದಲ್ಲಿಯ ಕರಾರನಿಂದ ಉದ್ಭವಿಸಬಹುದಾದ ಯಾವುದೇ ವಿವಾದವನ್ನು ಆ ಲಿಖಿತ ಕರಾರಿನಲ್ಲಿ ಉಪಬಂಧಿಸಿದ ವಿಧಾನದಲ್ಲಿ ಹಾಗೂ ಶಾಸನಗಳ ಅನುಸಾರವಾಗಿ ಪರಿಹರಿಸತಕ್ಕದ್ದು.

**39. ಮೇಲ್ಮನವಿ ಹಕ್ಕು.–** ವಿಶ್ವವಿದ್ಯಾಲಯವು ತನ್ನ ನೌಕರರ ಅಥವಾ ವಿದ್ಯಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡ ಸಂದರ್ಭದಲ್ಲಿ ಬಾಧಿತ ನೌಕರ ಅಥವಾ ವಿದ್ಯಾರ್ಥಿಯು ಶಾಸನಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಮೇಲ್ಮನವಿ ಹಕ್ಕು ಹೊಂದಿರತಕ್ಕದ್ದು.

**40. ಭವಿಷ್ಯ ನಿಧಿ ಮತ್ತು ನಿವೃತ್ತಿ ವೇತನ.**- ವಿಶ್ವವಿದ್ಯಾಲಯವು ತನ್ನ ನೌಕರರ ಪ್ರಯೋಜನಕ್ಕಾಗಿ ಶಾಸನಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ತಾನು ಸೂಕ್ತವೆಂದು ಭಾವಿಸಬಹುದಾದಂಥ ಭವಿಷ್ಯ ನಿಧಿ ಅಥವಾ ನಿವೃತ್ತಿ ವೇತನ ನಿಧಿಗಳನ್ನು ರಚಿಸತಕ್ಕದ್ದು ಹಾಗೂ ಅಂಥ ವಿಮಾ ಯೋಜನೆಗಳನ್ನು ಒದಗಿಸತಕ್ಕದ್ದು.

**41. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು.**- ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಇತರ ಸಂಸ್ಥೆಯ ಸದಸ್ಯನಾಗಿ ಯಾವೊಬ್ಬ ವ್ಯಕ್ತಿಯು ಸೂಕ್ತವಾಗಿ ಆಯ್ಕೆಯಾಗಿದ್ದಾನೆಯೇ ಅಥವಾ ನೇಮಕಗೊಂಡಿದ್ದಾನೆಯೇ ಅಥವಾ ಅದಕ್ಕೆ ಅರ್ಹನಾಗಿದ್ದಾನೆಯೇ ಎಂಬ ಯಾವುದೇ ಪ್ರಶ್ನೆ ಉದ್ಭವಿಸಿದರೆ ಆ ವಿಷಯವನ್ನು ತೀರ್ಮಾನಕ್ಕಾಗಿ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**42. ಸಮಿತಿಗಳ ರಚನೆ.**- 21ನೇ ಪ್ರಕರಣದಲ್ಲಿ ನಮೂದಿಸಿದ ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ತಾನು ಸೂಕ್ತವೆಂದು ಭಾವಿಸಬಹುದಾದಂಥ ಆ ಪ್ರಾಧಿಕಾರದ ಸದಸ್ಯರನ್ನು ಒಳಗೊಂಡಂಥ ಪ್ರಾಧಿಕಾರದ ಒಂದು ಸಮಿತಿಯನ್ನು ರಚಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**43. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು.**- ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಂಸ್ಥೆಯ ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ಪೈಕಿ ಯಾವುದೇ ಸ್ಥಾನವು ಆಕಸ್ಮಿಕವಾಗಿ ಖಾಲಿಯಾದರೆ ಯಾರ ಸ್ಥಾನವು ಖಾಲಿಯಾಗಿ ತುಂಬಬೇಕಾಗಿ ಬಂದಿದೆಯೋ ಆ ಸದಸ್ಯನನ್ನು ಯಾವ ರೀತಿಯಲ್ಲಿ ಆರಿಸಲಾಗಿತ್ತೋ ಅದೇ ರೀತಿಯಲ್ಲಿ ಹೊಸ ಸದಸ್ಯನನ್ನು ಆರಿಸಿ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ಖಾಲಿ ಸ್ಥಾನವನ್ನು ಭರ್ತಿ ಮಾಡಿದ ವ್ಯಕ್ತಿಯು ಆತನು ಯಾವ ಸದಸ್ಯನ ಸ್ಥಾನದಲ್ಲಿ ಭರ್ತಿಯಾಗಿರುವನೋ ಆ ಸದಸ್ಯನು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯನಾಗಿ ಉಳಿಯುತ್ತಿದ್ದ ಬಾಕಿ ಅವಧಿಯವರೆಗೆ ಮಾತ್ರ ಸದಸ್ಯನಾಗಿರತಕ್ಕದ್ದು.

**44. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.**- ಈ ಅಧಿನಿಯಮ ಅಥವಾ ಶಾಸನಗಳು ಅಥವಾ ನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ವಿಶ್ವವಿದ್ಯಾಲಯದ ಯಾವುದೇ ಅಧಿಕಾರಿ ಅಥವಾ ಇತರ ನೌಕರರ ವಿರುದ್ಧ ಯಾವುದೇ ದಾವೆ ಅಥವಾ ಇತರ ಕಾನೂನು ವ್ಯವಹರಣೆ ನಡೆಸಲು ಅವಕಾಶ ಇರತಕ್ಕದ್ದಲ್ಲ.

**45. ತಾತ್ಕಾಲಿಕ ಉಪಬಂಧಗಳು.**- ಈ ಅಧಿನಿಯಮ ಮತ್ತು ಶಾಸನಗಳ ಯಾವುದೇ ಇತರ ಉಪಬಂಧಗಳಲ್ಲಿ ಏನೇ ಇದ್ದರೂ,-

(i) ಮೊದಲ ಕುಲಪತಿಯವರನ್ನು ಮತ್ತು ಸಹಕುಲಪತಿಗಳು ಯಾರಾದರು ಇದ್ದರೆ ಅವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(ii) ಮೊದಲ ಕುಲಸಚಿವರನ್ನು ಮತ್ತು ಮೊದಲ ಹಣಕಾಸು ಅಧಿಕಾರಿಯವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು; ಮತ್ತು

(iii) ಮೊದಲ ಆಡಳಿತ ಮಂಡಳಿ, ಮೊದಲ ಹಣಕಾಸು ಸಮಿತಿ, ಮೊದಲ ದೂರಶಿಕ್ಷಣ ಸಮಿತಿ, ಮೊದಲ ಸಂಶೋಧನಾ ಪರಿಷತ್ತು ಹಾಗೂ ಮೊದಲ ಪರೀಕ್ಷಣ ಪರಿಷತ್ತನ್ನು ಕುಲಾಧಿಪತಿಯವರು ರಚಿಸತಕ್ಕದ್ದು.

**46. ಶಾಶ್ವತ ಶಾಸನಬದ್ಧ ದತ್ತಿ ನಿಧಿ.** (1) ವಿಶ್ವವಿದ್ಯಾಲಯವು, ಕನಿಷ್ಠ ಇಪ್ಪತ್ತೈದು ಕೋಟಿ ರೂಪಾಯಿಗಳನ್ನುಳ್ಳ ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು ಮತ್ತು ಈ ನಿಧಿಯನ್ನು ಸ್ವಪ್ರೇರಣೆಯಿಂದ ಹೆಚ್ಚಿಸಬಹುದೇ ಹೊರತು ಅದಕ್ಕಿಂತ ಕಡಿಮೆ ಮಾಡತಕ್ಕದ್ದಲ್ಲ.

(2) ವಿಶ್ವವಿದ್ಯಾಲಯವು, ನಿಯಮಿಸಬಹುದಾದಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಹಣವನ್ನು ಹೂಡಲು ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಗೆ ವರ್ಗಾವಣೆ ಮಾಡಬಹುದು. ವಿಶ್ವವಿದ್ಯಾಲಯವನ್ನು ಸಮಾಪಣೆಗೊಳಿಸುವ ಸಂದರ್ಭದಲ್ಲಿ ಹೊರತುಪಡಿಸಿ, ಇತರ ಯಾವ ಸಂದರ್ಭದಲ್ಲೂ ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಯಾವ ಮೊಬಲಗನ್ನೂ ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(4) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಬರುವ ಆದಾಯದ ಶೇಕಡಾ ಎಪ್ಪತ್ತೈದರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತೈದರಷ್ಟನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**47. ವಿಶ್ವವಿದ್ಯಾಲಯದ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂಥ ನಿಧಿಗಳನ್ನು ಒಳಗೊಂಡ ವಿಶ್ವವಿದ್ಯಾಲಯದ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಕಾಲಕಾಲಕ್ಕೆ ಸ್ವೀಕರಿಸಬಹುದಾದ ದೇಣಿಗೆಗಳು ಮತ್ತು ಇತರ ನಿಧಿಗಳೂ ಒಳಗೊಂಡಿರಬಹುದು.

(2) ವಿಶ್ವವಿದ್ಯಾಲಯವು, ಶಾಸನಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ವಿಶ್ವವಿದ್ಯಾಲಯದ ದತ್ತಿನಿಧಿಯನ್ನು ಹೂಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯದ ದತ್ತಿ ನಿಧಿಯು, ವಿಶ್ವವಿದ್ಯಾಲಯವು ತನ್ನ ಸಾಮಾಜಿಕ ಧ್ಯೇಯೋದ್ದೇಶಗಳನ್ನು ನೆರವೇರಿಸುವ ಸಂದರ್ಭದಲ್ಲಿ ಮತ್ತು/ಅಥವಾ ಮುಂಗಾಣದ ಸನ್ನಿವೇಶಗಳಲ್ಲಿ ಉದ್ಭವಿಸಬಹುದಾದ ಹಣಕಾಸು ಸವಾಲುಗಳಿಂದ ತನ್ನನ್ನು ರಕ್ಷಿಸಿಕೊಳ್ಳುವುದಕ್ಕಾಗಿ, ಸ್ವಇಚ್ಛೆಯಿಂದ ನಿರ್ವಹಿಸಿಕೊಂಡು ಬರಲು ಮತ್ತು ಜವಾಬ್ದಾರಿಯಿಂದ ಹಣ ಹೂಡಿಕೆ ಮಾಡಲು ಇಚ್ಛೆಯುಳ್ಳವರಾಗಿ ಸ್ವಯಂ ವಿಧಿಸಿಕೊಂಡ ನಿಧಿಯಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಗೆ ವರ್ಗಾಯಿಸಬಹುದು. ವಿಶ್ವವಿದ್ಯಾಲಯದ ಸಮಾಪಣೆಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭದಲ್ಲೂ ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನು ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(5) ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಬರುವ ಆದಾಯದ ಶೇಕಡಾ ಎಂಭತ್ತರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತರಷ್ಟನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**48. ಸಾಮಾನ್ಯ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಸಾಮಾನ್ಯ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯವು ವಿಧಿಸಬಹುದಾದ ಎಲ್ಲಾ ಶುಲ್ಕಗಳು;

(ii) ಯಾವುದೇ ಇತರ ಮೂಲಗಳಿಂದ ಸ್ವೀಕರಿಸಬಹುದಾದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯವು ಮಾಡುವ ಎಲ್ಲಾ ದೇಣಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು;

(2) ಸಾಮಾನ್ಯ ನಿಧಿಗೆ ಜಮಾ ಮಾಡುವ ನಿಧಿಗಳನ್ನು ವಿಶ್ವವಿದ್ಯಾಲಯದ ಎಲ್ಲಾ ಆವರ್ತಕ ವೆಚ್ಚಗಳನ್ನು ಭರಿಸಲು ಉಪಯೋಗಿಸಕೊಳ್ಳತಕ್ಕದ್ದು.

**49. ಅಭಿವೃದ್ಧಿ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಅಭಿವೃದ್ಧಿ ನಿಧಿಯನ್ನು ಸಹ ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಅಭಿವೃದ್ಧಿ ಶುಲ್ಕ;

(ii) ವಿಶ್ವವಿದ್ಯಾಲಯದ ಅಭಿವೃದ್ಧಿಯ ಉದ್ದೇಶಕ್ಕಾಗಿ ಯಾವುದೇ ಇತರ ಮೂಲಗಳಿಂದ ಸ್ವೀಕರಿಸಿದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯವು ನೀಡಿದ ಎಲ್ಲಾ ವಂತಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು;

(v) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸುವ ಎಲ್ಲಾ ಆದಾಯಗಳು

(2) ಅಭಿವೃದ್ಧಿ ನಿಧಿಗೆ ಕಾಲಕಾಲಕ್ಕೆ ಜಮಾ ಮಾಡಿದ ನಿಧಿಯನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಉಪಯೋಗಿಸಕೊಳ್ಳತಕ್ಕದ್ದು.

**50. ನಿಧಿಗಳ ನಿರ್ವಹಣೆ.–** 46, 47, 48, ಮತ್ತು 49ನೇ ಪ್ರಕರಣಗಳಡಿಯಲ್ಲಿ ಸ್ಥಾಪಿಸಲಾದ ನಿಧಿಗಳನ್ನು ಪ್ರಬಂಧಕ ಮಂಡಳಿಯ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಗಳಿಗೆ ಒಳಪಟ್ಟು ನಿಯಮಿಸಬಹುದಾದಂಥ ವಿಧಾನದಲ್ಲಿ ನಿಯಂತ್ರಿಸತಕ್ಕದ್ದು ಹಾಗೂ ಇಟ್ಟುಕೊಂಡು ಬರತಕ್ಕದ್ದು.

**51. ವಾರ್ಷಿಕ ವರದಿ.–** (1) ವಿಶ್ವವಿದ್ಯಾಲಯದ ವಾರ್ಷಿಕ ವರದಿಯನ್ನು ಆಡಳಿತ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ಅನುಮೋದನೆ ಕೋರಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಪ್ರಬಂಧಕ ಮಂಡಳಿಯು ವಾರ್ಷಿಕ ವರದಿಯನ್ನು ತನ್ನ ಸಭೆಯಲ್ಲಿ ಪರಿಗಣಿಸತಕ್ಕದ್ದು ಹಾಗೂ ಅದನ್ನು ಮಾರ್ಪಾಡುಗಳೊಡನೆ ಅಥವಾ ಮಾರ್ಪಾಡುಗಳಿಲ್ಲದೆ ಅನುಮೋದಿಸಬಹುದು.

(3) ಪ್ರಬಂಧಕ ಮಂಡಳಿಯು ಸೂಕ್ತವಾಗಿ ಅನುಮೋದಿಸಿದ ವಾರ್ಷಿಕ ವರದಿಯ ಒಂದು ಪ್ರತಿಯನ್ನು ಸಂದರ್ಶಕರಿಗೆ ಹಾಗೂ ರಾಜ್ಯ ಸರ್ಕಾರಕ್ಕೆ ಪ್ರತಿವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ನಂತರವಾಗಿ ಬರುವ ಡಿಸೆಂಬರ್ 31ಕ್ಕೆ ಮೊದಲು ಸಲ್ಲಿಸತಕ್ಕದ್ದು.

**52. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.–** (1) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕ ಪತ್ರ ಮತ್ತು ಜಮಾ ಖರ್ಚು ...ನ್ನು ಆಡಳಿತ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯಕ್ಕೆ ಎಲ್ಲಾ ಮೂಲಗಳಿಂದ ...ಾಗುವ ಅಥವಾ ಅದು ಸ್ವೀಕರಿಸುವ ಎಲ್ಲಾ ನಿಧಿಗಳು ಹಾಗೂ ವಿತರಿಸಿದ ಅಥವಾ ಸಂದಾಯ ಮಾಡಿದ ಎಲ್ಲಾ ...ಗುಗಳನ್ನು ವಿಶ್ವವಿದ್ಯಾಲಯವು ನಿರ್ವಹಿಸುವ ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕಪತ್ರಗಳನ್ನು ಪ್ರತಿ ವರ್ಷವೂ ಭಾರತದ ಚಾರ್ಟೆಡ್ ಅಕೌಂಟೆಂಟ್‌ಗಳ ...ಯ ಸದಸ್ಯರಾಗಿರುವ ಒಬ್ಬ ಲೆಕ್ಕಪರಿಶೋಧಕರಿಂದ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಲೆಕ್ಕಪರಿಶೋಧನಾ ವರದಿಯೊಡನೆ ಪ್ರಬಂಧಕ ...ಡಳಿಗೆ ಪ್ರತಿ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ನವೆಂಬರ್ 30ಕ್ಕೆ ...ದಲು ಸಲ್ಲಿಸತಕ್ಕದ್ದು.

(4) ವಾರ್ಷಿಕ ವರದಿಗಳು, ಜಮಾಖರ್ಚು ಪಟ್ಟಿ ಮತ್ತು ಲೆಕ್ಕಪರಿಶೋಧಕ ವರದಿಯನ್ನು ಪ್ರಬಂಧಕ ಮಂಡಳಿಯು ...ಸಭೆಯಲ್ಲಿ ಪರ್ಯಾಲೋಚಿಸತಕ್ಕದ್ದು ಮತ್ತು ಪ್ರಬಂಧಕ ಮಂಡಳಿಯು ಅದನ್ನು ತನ್ನ ಅಭಿಪ್ರಾಯಗಳೊಡನೆ ...ದರ್ಶಕರಿಗೆ ಹಾಗೂ ಸರ್ಕಾರಕ್ಕೆ ಪ್ರತಿ ವರ್ಷದ ಡಿಸೆಂಬರ್ 31ಕ್ಕೆ ಮುಂಚೆ ಕಳುಹಿಸತಕ್ಕದ್ದು.

(5) ಲೆಕ್ಕಪರಿಶೋಧಕರ ವರದಿಯಲ್ಲಿ ಯಾವುದಾದರೂ ಗಮನಾರ್ಹ ಮಾರ್ಪಾಟು ಕಂಡುಬಂದಲ್ಲಿ ರಾಜ್ಯ ...ರ್ಕಾರವು ವಿಶ್ವವಿದ್ಯಾಲಯಕ್ಕೆ ನಿರ್ದೇಶನಗಳನ್ನು ನೀಡತಕ್ಕದ್ದು ಮತ್ತು ಅಂಥ ನಿರ್ದೇಶನಗಳಿಗೆ ವಿಶ್ವವಿದ್ಯಾಲಯವು ...ದ್ಧವಾಗಿರತಕ್ಕದ್ದು.

**53. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಮಿತಿಯ ಯಾವುದೇ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ ಅಥವಾ ನಿರ್ಣಯಗಳು ಅಥವಾ ವಿಶ್ವವಿದ್ಯಾಲಯದ ಸ್ವಾಧೀನದಲ್ಲಿರುವ ಇತರ ದಾಖಲೆಗಳು ಅಥವಾ ವಿಶ್ವವಿದ್ಯಾಲಯವು ಸೂಕ್ತವಾಗಿ ನಿರ್ವಹಿಸುವ ಯಾವುದೇ ರಿಜಿಸ್ಟರ್‌ನಲ್ಲಿಯ ಯಾವುದೇ ನಮೂದುಗಳ ಪ್ರತಿಗಳನ್ನು ಅವುಗಳ ಮೇಲೆ ಕುಲಸಚಿವರು ಪ್ರಮಾಣೀಕರಿಸಿದ್ದರೆ, ಅವುಗಳನ್ನು, ಅಂಥ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ, ನಿರ್ಣಯ ಅಥವಾ ದಾಖಲೆ ಅಥವಾ ರಿಜಿಸ್ಟರ್‌ನಲ್ಲಿ ಇರುವ ನಮೂದುಗಳು ಮೇಲ್ನೋಟದ ಸಾಕ್ಷ್ಯವೆಂಬುದಾಗಿ ಸ್ವೀಕರಿಸತಕ್ಕದ್ದು ಮತ್ತು ವಿಷಯಗಳ ಸಾಕ್ಷಿಯಾಗಿ ಅವುಗಳನ್ನು ಅಂಗೀಕರಿಸತಕ್ಕದ್ದು ಹಾಗೂ ಅವುಗಳ ಮೂಲ ದಾಖಲೆಗಳನ್ನೇ ಸಲ್ಲಿಸಿದ್ದರೆ ಹೇಗೆ ಅದನ್ನು ಅವುಗಳಲ್ಲಿ ದಾಖಲಿಸಿರುವ ವಿಷಯಗಳು ಮತ್ತು ವಹಿವಾಟುಗಳ ಸಾಕ್ಷ್ಯವಾಗಿ ಅಂಗೀಕರಿಸಲಾಗುತ್ತಿತ್ತೋ ಅದೇ ರೀತಿ ಇವನ್ನೂ ಸಾಕ್ಷ್ಯವಾಗಿ ಅಂಗೀಕರಿಸತಕ್ಕದ್ದು.

**54. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಅಧಿಕಾರ.–** (1) ವಿಶ್ವವಿದ್ಯಾಲಯವು ತನ್ನ ರಚನೆ ಅಥವಾ ನಿಗಮನವನ್ನು ನಿಯಂತ್ರಿಸುವ ಕಾನೂನಿಗೆ ಅನುಸಾರವಾಗಿ ತನ್ನ ಸಮಾಪನವನ್ನು ಉದ್ದೇಶಿಸಿದ್ದಲ್ಲಿ ಅದು ಕನಿಷ್ಠ ಆರು ತಿಂಗಳ ಲಿಖಿತ ನೋಟಿಸನ್ನು ಸರ್ಕಾರಕ್ಕೆ ನೀಡತಕ್ಕದ್ದು.

(2) ದುರ್ವ್ಯವಹರಣೆ, ದುರಾಡಳಿತ ಮತ್ತು ಅಶಿಸ್ತು ಆಗಿದೆ ಎಂಬುದನ್ನು ಗುರುತಿಸಿದರೆ, ಸರ್ಕಾರವು ವಿಶ್ವವಿದ್ಯಾಲಯದ ಆಡಳಿತ ವರ್ಗದವರಿಗೆ ಆಡಳಿತ ಸರಿಪಡಿಸಬೇಕೆಂದು ನಿರ್ದೇಶನಗಳನ್ನು ನೀಡತಕ್ಕದ್ದು. ನಿರ್ದಿಷ್ಟಪಡಿಸಲಾದಂಥ ಅವಧಿಯೊಳಗೆ ಆ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುವ ಅಧಿಕಾರವು ಸರ್ಕಾರದಲ್ಲಿ ನಿಹಿತವಾಗತಕ್ಕದ್ದು.

(3) ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ವಿಧಾನವು, ಸರ್ಕಾರವು ಈ ಸಂಬಂಧದಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು:

ಪರಂತು ವಿಶ್ವವಿದ್ಯಾಲಯವು ತನ್ನ ಕಾರಣಗಳನ್ನು ಹೇಳಿಕೊಳ್ಳಲು ಸಮಂಜಸ ಅವಕಾಶಗಳನ್ನು ನೀಡಿದ ಹೊರತು ಅಂಥ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

(4) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೋಟಿಸನ್ನು ಸ್ವೀಕರಿಸಿದ ಮೇಲೆ, ಸರ್ಕಾರವು ಸಂಬಂಧಿಸಿದ ನಿಯಂತ್ರಣಾ ಪ್ರಾಧಿಕಾರದೊಡನೆ ಸಮಾಲೋಚಿಸಿ, ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ಉದ್ದೇಶಿಸಿದ ದಿನಾಂಕದಿಂದ, ವಿಶ್ವವಿದ್ಯಾಲಯದಲ್ಲಿ ನಿಯತ ವ್ಯಾಸಂಗ ಕ್ರಮಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕೊನೆಯ ತಂಡ (ಬ್ಯಾಚ್) ತನ್ನ ವ್ಯಾಸಂಗ ಕ್ರಮ ಮುಗಿಸುವವರೆಗೆ ಶಾಸನಗಳಲ್ಲಿ ನಿರ್ದಿಷ್ಟಪಡಿಸಬಹುದಾದಂಥ ವಿಧಾನದಲ್ಲಿ ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು.

**55. ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು.–** (1) 54ನೇ ಪ್ರಕರಣದ (4)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತವನ್ನು ಕೈಗೆತ್ತಿಕೊಳ್ಳುವ ಅವಧಿಯಲ್ಲಿ ಅದರ ಆಡಳಿತಾತ್ಮಕ ವೆಚ್ಚಗಳನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಭರಿಸತಕ್ಕದ್ದು.

(2) ವಿಶ್ವವಿದ್ಯಾಲಯದ ಆಡಳಿತವನ್ನು ಕೈಗೆತ್ತಿಕೊಳ್ಳುವ ಅವಧಿಯಲ್ಲಿ ವಿಶ್ವವಿದ್ಯಾಲಯದ ವೆಚ್ಚವನ್ನು ಭರಿಸಲು 46, 47, 48, ಮತ್ತು 49ನೇ ಪ್ರಕರಣಗಳ ಅಡಿಯಲ್ಲಿ ಉಲ್ಲೇಖಿಸಲಾದ ನಿಧಿಯು ಸಾಕಷ್ಟು ಇಲ್ಲದಿದ್ದಲ್ಲಿ, ಅಂಥ ವೆಚ್ಚವನ್ನು ಸರ್ಕಾರವು, ವಿಶ್ವವಿದ್ಯಾಲಯದ ಸ್ವತ್ತುಗಳು ಮತ್ತು ಆಸ್ತಿಗಳನ್ನು ವಿಲೇ ಮಾಡುವ ಮೂಲಕ ಭರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಸಮಾಪನೆಯು ದುರ್ವ್ಯವಹರಣೆ ಅಥವಾ ದುರಾಡಳಿತದ ಕಾರಣಗಳಿಗಾಗಿ ಆಗಿದ್ದರೆ, ಸರ್ಕಾರವು ಅಂಥ ದುರ್ವ್ಯವಹಾರಕ್ಕೆ ಅಥವಾ ದುರಾಡಳಿತಕ್ಕೆ ಹೊಣೆಯಾಗಿರುವ ವ್ಯಕ್ತಿಗಳನ್ನು ಗುರುತಿಸುವ ಮತ್ತು ಅವರ ಮೇಲೆ ತಾನು ಸೂಕ್ತವೆಂದು ಭಾವಿಸಬಹುದಾದಂಥ ದಂಡನೆಯನ್ನು ವಿಧಿಸಲು ಸ್ವತಂತ್ರವಾಗಿರತಕ್ಕದ್ದು.

**56. ತೊಂದರೆಗಳ ನಿವಾರಣೆಗೆ ಅಧಿಕಾರ.–** (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಅಥವಾ ಆದೇಶದ ಮೂಲಕ ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಮೂರು ವರ್ಷಗಳು ಮುಕ್ತಾಯವಾದ ತರುವಾಯ ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಅಧಿಸೂಚನೆ ಅಥವಾ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) (1) ನೇ ಉಪ ಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು ಅದನ್ನು ರಚಿಸಿದ ತರುವಾಯ ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

**57. ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ.–** (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ಹೊರಡಿಸಲಾದ ಪ್ರತಿಯೊಂದು ನಿಯಮವನ್ನು ಅದನ್ನು ರಚಿಸಿದ ತರುವಾಯ ಆದಷ್ಟು ಬೇಗನೆ ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ ಅದು ಅಧಿವೇಶನದಲ್ಲಿರುವಾಗ

...ಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮುಂಚೆ ರಾಜ್ಯ ವಿಧಾನಮಂಡಲದ ಎರಡೂ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ, ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಒಪ್ಪಿದರೆ ತದನಂತರ ಅಂಥ ನಿಯಮವು ಸಂದರ್ಭಾನುಸಾರ ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ದತಿಯು ಈ ನಿಯಮದ ಅಡಿಯಲ್ಲಿ ಈ ಮುಂಚೆ ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧೆ ಉಂಟುಮಾಡತಕ್ಕದ್ದಲ್ಲ.

**58. ನಿರಸನ ಮತ್ತು ಉಳಿಸುವಿಕೆಗಳು.–** (1) ಅಜೀಂ ಪ್ರೇಂಜೀ ವಿಶ್ವವಿದ್ಯಾಲಯ ಅಧ್ಯಾದೇಶ, 2009ನ್ನು (2009ರ ಕರ್ನಾಟಕ ಅಧ್ಯಾದೇಶ ಸಂಖ್ಯೆ 7) ಈ ಮೂಲಕ ನಿರಸನಗೊಳಿಸಲಾಗಿದೆ.

(2) ಹಾಗೆ ನಿರಸನಗೊಂಡಿದಾಗ್ಯೂ, ಸದರಿ ಅಧ್ಯಾದೇಶದಡಿಯಲ್ಲಿ ಕೈಗೊಂಡ ಯಾವುದೇ ಕ್ರಮ ಅಥವಾ ಮಾಡಲಾದ ಯಾವುದೇ ಕಾರ್ಯಗಳನ್ನು ಈ ಅಧಿನಿಯಮದಡಿಯಲ್ಲಿ ಕೈಗೊಳ್ಳಲಾಗಿದೆ ಅಥವಾ ಮಾಡಲಾಗಿದೆ ಎಂದು ಭಾವಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

**ಜಿ.ಕೆ.ಬೋರೇಗೌಡ**

ಸರ್ಕಾರದ ಕಾರ್ಯದರ್ಶಿ

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ-3)

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

**ಅಧಿಕೃತವಾಗಿ ಪ್ರಕಟಿಸಲಾದುದು**

**ವಿಶೇಷ ರಾಜ್ಯ ಪತ್ರಿಕೆ**



| ಭಾಗ - IV-A | ಬೆಂಗಳೂರು, ಶನಿವಾರ, ಮಾರ್ಚ್ ೩೦, ೨೦೧೩ (ಚೈತ್ರ ೯, ಶಕ ವರ್ಷ ೧೯೩೪) | ನಂ. ೬೫೫ |
|---|---|---|
| Part - IV-A | Bangalore, Saturday, March 30, 2013 (Chaithra 9, Shaka Varsha 1934) | No. 655 |



**ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಸಚಿವಾಲಯ**

**ಅಧಿಸೂಚನೆ**

**ಸಂಖ್ಯೆ: ಸಂವ್ಯಶಾಇ 10 ಶಾಸನ 2013, ಬೆಂಗಳೂರು, ದಿನಾಂಕ: 30.03.2013**

ಸಿ.ಎಂ.ಆರ್. ವಿಶ್ವವಿದ್ಯಾಲಯ ವಿಧೇಯಕ, 2013 – ಇದಕ್ಕೆ 2013ರ ಮಾರ್ಚ್ ತಿಂಗಳ ಇಪ್ಪತ್ತೈದನೇ ದಿನಾಂಕದಂದು ಘನತೆವೆತ್ತ ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2013ರ ಕರ್ನಾಟಕ ಅಧಿನಿಯಮ ಸಂಖ್ಯೆ: 45 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2013 ರ ಕರ್ನಾಟಕ ಅಧಿನಿಯಮ ಸಂಖ್ಯೆ: 45**

(2013ರ ಮಾರ್ಚ್ ಮಾಹೆಯ ಮೂವತ್ತನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಸಿ.ಎಂ.ಆರ್. ವಿಶ್ವವಿದ್ಯಾಲಯ ಅಧಿನಿಯಮ, 2013**

(2013ರ ಮಾರ್ಚ್ ಮಾಹೆಯ ಇಪ್ಪತ್ತೈದನೇ ದಿನಾಂಕದಂದು ರಾಜ್ಯಪಾಲರ ಅನುಮತಿಯನ್ನು ಪಡೆಯಲಾಗಿದೆ)

ಸಾಮಾನ್ಯ, ತಾಂತ್ರಿಕ, ಆರೋಗ್ಯ, ವ್ಯವಸ್ಥಾಪನೆ, ಜೀವ ವಿಜ್ಞಾನಗಳು ಮತ್ತು ಇವುಗಳಿಗೆ ಸಂಬಂಧಪಟ್ಟ ವಲಯಗಳು ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯ ಮಟ್ಟದ ಶಿಕ್ಷಣದಲ್ಲಿ ಪ್ರಗತಿಪರ ವಿಚಾರಗಳನ್ನು ಪ್ರೋತ್ಸಾಹಿಸಲು ಮತ್ತು ಕೈಗೊಳ್ಳಲು ಸಿ.ಎಂ.ಆರ್. ಜ್ಞಾನಧಾರ ನ್ಯಾಸದ ಮೂಲಕ ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದಕ್ಕಾಗಿ ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡು ಬರುವ ಉದ್ದೇಶಗಳಿಗಾಗಿ ಸಾಮಾನ್ಯ, ತಾಂತ್ರಿಕ, ಆರೋಗ್ಯ, ವ್ಯವಸ್ಥಾಪನೆ, ಜೀವ ವಿಜ್ಞಾನಗಳು ಮತ್ತು ಇವುಗಳಿಗೆ ಸಂಬಂಧಪಟ್ಟ ವಲಯಗಳು ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯ ಮಟ್ಟದ ಶಿಕ್ಷಣದಲ್ಲಿ ಪ್ರಗತಿಪರ ವಿಚಾರಗಳನ್ನು ಪ್ರೋತ್ಸಾಹಿಸಲು ಮತ್ತು ಕೈಗೊಳ್ಳಲು ಸಿ.ಎಂ.ಆರ್. ಜ್ಞಾನಧಾರ ನ್ಯಾಸದ ಮೂಲಕ ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ನಾಲ್ಕನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

## ಅಧ್ಯಾಯ - I

## ಪ್ರಾರಂಭಿಕ

1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.– (1) ಈ ಅಧಿನಿಯಮವನ್ನು ಸಿ.ಎಂ.ಆರ್. ವಿಶ್ವವಿದ್ಯಾಲಯ ಅಧಿನಿಯಮ, 2013 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು, ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

2. ಪರಿಭಾಷೆಗಳು.- ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) "ಶೈಕ್ಷಣಿಕ ಪರಿಷತ್ತು (ಅಕೆಡೆಮಿಕ್ ಕೌನ್ಸಿಲ್)" ಎಂದರೆ, 25ನೇ ಪ್ರಕರಣದ ಅಡಿಯಲ್ಲಿ ನಿರ್ದಿಷ್ಟಪಡಿಸಲಾದ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು;

(ಬಿ) "ಕಾರ್ಯಸೂಚಿ ವಿಷಯಗಳು", ಎಂದರೆ, ಪರಿನಿಯಮಗಳಲ್ಲಿ ಹೆಸರಿಸಬಹುದಾದ ಮತ್ತು ಒಂದು ಸಭೆಯಲ್ಲಿ ಆ ವಿಷಯಗಳನ್ನು ಮತ್ತು ಕಲಾಪಗಳನ್ನು ಅನುಮೋದಿಸಬಹುದೆಂದು ತಮ್ಮ ಸಮ್ಮತಿ ಸೂಚಿಸಿ ಕುಲಾಧಿಪತಿಯವರು ಮುಂಚಿತವಾಗಿಯೇ ಲಿಖಿತ ಅನುಮೋದನೆಯನ್ನು ಕೊಟ್ಟಿದ್ದಾಗ ಮಾತ್ರವೇ ಸಂದರ್ಭಾನುಸಾರ, ಪ್ರಬಂಧಕ ಮಂಡಳಿ ಅಥವಾ ಕಾರ್ಯ ನಿರ್ವಹಣಾ ಪರಿಷತ್ತು ಅಥವಾ ಯಾವುದೇ ಸಮಿತಿಯವರು ಕಾರ್ಯಸೂಚಿಯಲ್ಲಿ ಸೇರಿಸಬಹುದಾದ ಅಥವಾ ಸಭೆಯಲ್ಲಿ ಚರ್ಚೆಗೆ ತೆಗೆದುಕೊಂಡು ನಿರ್ಣಯವನ್ನು ಕೊಡಬಹುದಾದ ಎಲ್ಲಾ ವಿಷಯಗಳು ಮತ್ತು ಕಲಾಪಗಳು;

(ಸಿ) "ಪ್ರಬಂಧಕ ಮಂಡಳಿ" ಎಂದರೆ, 23ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಲಾದಂತೆ ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ;

(ಡಿ) "ವ್ಯವಸ್ಥಾಪನಾ ಮಂಡಳಿ" ಎಂದರೆ 24ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಲಾದಂತೆ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿ;

(ಇ) "ಕುಲಾಧಿಪತಿ", "ಕುಲಪತಿ", "ಸಹಕುಲಪತಿ" ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ ಮತ್ತು ಸಹಕುಲಪತಿ;

(ಎಫ್) "ಕ್ಯಾಂಪಸ್" ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುವ ಒಂದು ಕ್ಯಾಂಪಸ್;

(ಜಿ) "ಸಮಿತಿಗಳು" ಎಂದರೆ, ಈ ಅಧಿನಿಯಮದಡಿಯಲ್ಲಿ ರಚಿಸಿದ ಅಥವಾ ಸಂದರ್ಭಾನುಸಾರವಾಗಿ ವಿಶ್ವವಿದ್ಯಾಲಯದ ವಿವಿಧ ಕಾರ್ಯಕರ್ತರು ರಚಿಸಿರುವ ಸಮಿತಿಗಳು, ಮತ್ತು ಅದರಲ್ಲಿ ನಾಮನಿರ್ದೇಶನ ಸಮಿತಿ, ಹಣಕಾಸು ಸಮಿತಿ ಮತ್ತು ಅಂಥ ಇತರ ಸಮಿತಿಗಳು ಒಳಗೊಳ್ಳುತ್ತವೆ;

(ಎಚ್) "ಘಟಕ ಕಾಲೇಜು" ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುತ್ತಿರುವ ಒಂದು ಕಾಲೇಜು ಅಥವಾ ಸಂಸ್ಥೆ;

(ಐ) "ಹಣಕಾಸು ಪರಿಷತ್ತು" ಎಂದರೆ, 27ನೇ ಪ್ರಕರಣದ ಅಡಿಯಲ್ಲಿ ರಚಿಸಿದ ವಿಶ್ವವಿದ್ಯಾಲಯದ ಹಣಕಾಸು ಪರಿಷತ್ತು;

(ಜೆ) "ಸರ್ಕಾರ" ಎಂದರೆ, ಕರ್ನಾಟಕ ಸರ್ಕಾರ;

(ಕೆ) "ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳು" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು, ಭಾರತೀಯ ವೈದ್ಯಕೀಯ ಪರಿಷತ್ತು, ಭಾರತೀಯ ಔಷಧ ವಿಜ್ಞಾನ ಪರಿಷತ್ತು, ಭಾರತೀಯ ಕೃಷಿ ಸಂಶೋಧನಾ ಪರಿಷತ್ತು, ರಾಷ್ಟ್ರೀಯ ಮೌಲ್ಯಮಾಪನ ಮತ್ತು ಅಧಿಮಾನ್ಯತಾ ಪರಿಷತ್ತು, ರಾಷ್ಟ್ರೀಯ ಬೋಧಕ ಶಿಕ್ಷಣ ಪರಿಷತ್ತು, ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಪರಿಷತ್ತುಗಳಂಥವುಗಳು ಉನ್ನತ ಶಿಕ್ಷಣದಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುವಂತೆ ನೋಡಿಕೊಳ್ಳುವುದಕ್ಕಾಗಿ ಹಾಗೂ ಗುಣಮಟ್ಟಗಳು ಮತ್ತು ಷರತ್ತುಗಳನ್ನು ವಿಧಿಸುವುದಕ್ಕಾಗಿ ಕೇಂದ್ರ ಸರ್ಕಾರವು ಸ್ಥಾಪಿಸಿರುವ ಒಂದು ಸಂಸ್ಥೆ ಮತ್ತು ಇದರಲ್ಲಿ ಸರ್ಕಾರವೂ ಸೇರಿರುತ್ತದೆ;

(ಎಲ್) "ನಿಯಮಿಸಲಾದುದು" ಎಂದರೆ, ಈ ಅಧಿನಿಯಮದಡಿಯಲ್ಲಿ ಸರ್ಕಾರವು ರಚಿಸಿದ ನಿಯಮಗಳ ಮೂಲಕ ನಿಯಮಿಸಲಾದುದು;

(ಎಂ) "ಒಂದು ಘಟಕ ಕಾಲೇಜಿಗೆ ಸಂಬಂಧಪಟ್ಟಂತೆ ಪ್ರಾಂಶುಪಾಲರು" ಎಂದರೆ, ಘಟಕ ಕಾಲೇಜಿನ ಮುಖ್ಯಸ್ಥರು ಮತ್ತು ಪ್ರಾಂಶುಪಾಲರು ಇಲ್ಲದಿದ್ದಲ್ಲಿ ಅಥವಾ ನೇಮಕವಾದ ಪ್ರಾಂಶುಪಾಲರ ಗೈರುಹಾಜರಿಯಲ್ಲಿ ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ತಾತ್ಕಾಲಿಕವಾಗಿ ನೇಮಕಗೊಂಡಿರುವ ಉಪಪ್ರಾಂಶುಪಾಲರು ಅಥವಾ ಯಾವೊಬ್ಬ ಇತರ ವ್ಯಕ್ತಿಯೂ ಇದರಲ್ಲಿ ಒಳಗೊಳ್ಳುತ್ತಾರೆ;

(ಎನ್) "ಕುಲಸಚಿವರು" ಎಂದರೆ, ವಿಶ್ವವಿದ್ಯಾಲಯದ ಕುಲಸಚಿವರು;

(ಒ) "ಪ್ರಾದೇಶಿಕ ಕೇಂದ್ರ" ಎಂದರೆ, ಯಾವುದೇ ಪ್ರದೇಶದಲ್ಲಿನ ಅಧ್ಯಯನ ಕೇಂದ್ರಗಳ ಕಾರ್ಯವನ್ನು ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ಮಾಡುವ ಉದ್ದೇಶಕ್ಕಾಗಿ ಮತ್ತು ಅಂಥ ಕೇಂದ್ರಕ್ಕೆ ಕಾರ್ಯನಿರ್ವಹಣಾ ಪರಿಷತ್ತು ವಹಿಸಿಕೊಡಬಹುದಾದ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸುವುದಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಅಥವಾ ನಿರ್ವಹಿಸಿಕೊಂಡುಬರುವ ಒಂದು ಕೇಂದ್ರ;

(ಪಿ) ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ "ಪ್ರಾಯೋಜಕ ಪ್ರಾಧಿಕಾರ" ಅಥವಾ "ಪ್ರಾಯೋಜಕ ಸಂಸ್ಥೆ" ಎಂದರೆ, ಸದರಿ ಪ್ರಾಯೋಜಕ ಸಂಸ್ಥೆ;

(ಕ್ಯೂ) "ರಾಜ್ಯ" ಎಂದರೆ, ಕರ್ನಾಟಕ ರಾಜ್ಯ;

(ಆರ್) "ಪರಿನಿಯಮಗಳು" ಮತ್ತು "ವಿನಿಯಮಗಳು" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಅನುಕ್ರಮವಾಗಿ ವಿಶ್ವವಿದ್ಯಾಲಯದ ಪರಿನಿಯಮಗಳು ಮತ್ತು ವಿನಿಯಮಗಳು;

(ಎಸ್) "ಅಧ್ಯಯನ ಕೇಂದ್ರ" ಎಂದರೆ, ವಿದ್ಯಾರ್ಥಿಗಳಿಗೆ ಅಗತ್ಯವಾದ ಮಾರ್ಗದರ್ಶನ ಮಾಡುವ, ಸಲಹೆಗಳನ್ನು ನೀಡುವ ಅಥವಾ ಇತರ ಯಾವುದೇ ನೆರವನ್ನು ನೀಡುವ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಮತ್ತು ನಿರ್ವಹಿಸಿಕೊಂಡುಬಂದ ಒಂದು ಕೇಂದ್ರ;

(ಟಿ) "ಅಧ್ಯಾಪಕರು" ಎಂದರೆ, ಒಬ್ಬ ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಅಡ್‌ಜಂಕ್ಟ್ ಪ್ರಾಧ್ಯಾಪಕರು ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಒಂದು ಘಟಕ ಕಾಲೇಜಿನಲ್ಲಿ ಬೋಧಿಸುವುದಕ್ಕೆ ಅಥವಾ ಸಂಶೋಧನೆ ನಡೆಸುವುದಕ್ಕೆ ಅಥವಾ ಸಂಶೋಧನೆಗೆ ಮಾರ್ಗದರ್ಶನ ನೀಡುವುದಕ್ಕೆ ನೇಮಕವಾದ ಅಂಥ ಇತರ ವ್ಯಕ್ತಿ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗವು ನಿರ್ದಿಷ್ಟಪಡಿಸಿದ ಗುಣಮಟ್ಟಗಳಿಗೆ ಅನುಸಾರವಾಗಿ ಇರುವ ಘಟಕ ಕಾಲೇಜಿನ ಪ್ರಾಂಶುಪಾಲರು ಇದರಲ್ಲಿ ಒಳಗೊಳ್ಳುತ್ತಾರೆ;

(ಯು) "ನ್ಯಾಸ" ಎಂದರೆ ಭಾರತೀಯ ನ್ಯಾಸ ಅಧಿನಿಯಮ, 1882ರ ಅಡಿಯಲ್ಲಿ ನೋಂದಣಿಯಾದ ಸಿ.ಎಂ.ಆರ್. ಜ್ಞಾನಧಾರ ನ್ಯಾಸ;

(ವಿ) "ವಿಶ್ವವಿದ್ಯಾಲಯ ಅನುದಾನಗಳ ಆಯೋಗ" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) 4ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ಆಯೋಗ;

(ಡಬ್ಲ್ಯೂ) "ವಿಶ್ವವಿದ್ಯಾಲಯ" ಎಂದರೆ, ಈ ಅಧಿನಿಯಮದಡಿಯಲ್ಲಿ ಸ್ಥಾಪಿಸಿ ನಿಗಮಿತಗೊಳಿಸಲಾದ ಸಿ.ಎಂ.ಆರ್. ವಿಶ್ವವಿದ್ಯಾಲಯ;

(ಎಕ್ಸ್) "ಸಂದರ್ಶಕರು" ಎಂದರೆ, 13ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ವಿಶ್ವವಿದ್ಯಾಲಯದ ಸಂದರ್ಶಕರು.

## ಅಧ್ಯಾಯ– II

## ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

**3. ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ.–** (1) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಹಕ್ಕನ್ನು ನ್ಯಾಸವು ಹೊಂದಿರತಕ್ಕದ್ದು.

(2) ನ್ಯಾಸವು ರಾಜ್ಯ ಸರ್ಕಾರಕ್ಕೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವವನ್ನು ಸಲ್ಲಿಸತಕ್ಕದ್ದು.

(3) ಪ್ರಸ್ತಾವವು ಈ ಮುಂದಿನ ವಿವರಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ನ್ಯಾಸದ ವಿವರಗಳೊಂದಿಗೆ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು;

(ii) ವಿಶ್ವವಿದ್ಯಾಲಯದ ವ್ಯಾಪ್ತಿ ಮತ್ತು ಸ್ಥಾನಮಾನ ಹಾಗೂ ಭೂಮಿಯ ಲಭ್ಯತೆ;

(iii) ಪ್ರಾರಂಭದ ದಿನಾಂಕದಿಂದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳಬೇಕೆಂದಿರುವ ಅಧ್ಯಯನ ಮತ್ತು ಸಂಶೋಧನಾ ಕಾರ್ಯಕ್ರಮಗಳ ಸ್ವರೂಪ ಮತ್ತು ಬಗೆಗಳು;

(iv) ಪ್ರಾರಂಭಿಸಬೇಕೆಂದು ಪ್ರಸ್ತಾಪಿಸಿರುವ ವ್ಯಾಸಂಗ ವಿಭಾಗಗಳು (ಫ್ಯಾಕಲ್ಟಿಗಳು), ಅಧ್ಯಯನ ಕ್ರಮಗಳು ಮತ್ತು ಸಂಶೋಧನೆಗಳ ಸ್ವರೂಪ;

(v) ಕಟ್ಟಡಗಳು, ಸಲಕರಣೆಗಳು ಮತ್ತು ರಚನಾ ಸೌಕರ್ಯಗಳನ್ನು ಒದಗಿಸುವಂಥ ಕ್ಯಾಂಪಸ್ ಅಭಿವೃದ್ಧಿ;

(vi) ಪ್ರಾರಂಭದ ದಿನಾಂಕದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಗಾಗಿ ಬಂಡವಾಳ ವೆಚ್ಚದ ಹಂತಗಳು;

(vii) ಬಾಬುವಾರು ಆವರ್ತಕ ವೆಚ್ಚ, ಆರ್ಥಿಕ ಮೂಲಗಳು ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ತಗಲುವ ಅಂದಾಜು ವೆಚ್ಚ;

(viii) ಸಂಪನ್ಮೂಲ ಸಂಗ್ರಹಣೆಗಾಗಿ ಯೋಜನೆ ಮತ್ತು ಅದಕ್ಕೆ ಬಂಡವಾಳದಿಂದ ತಗಲುವ ವೆಚ್ಚ ಹಾಗೂ ಪ್ರತಿಯೊಂದು ಮೂಲಕ್ಕೂ ಮರು ಸಂದಾಯ ಮಾಡುವ ರೀತಿ;

(ix) ವಿದ್ಯಾರ್ಥಿಗಳಿಂದ ಶುಲ್ಕ ವಸೂಲು ಮಾಡಿ ಆಂತರಿಕವಾಗಿ ನಿಧಿ ಸಂಗ್ರಹಿಸುವ ಯೋಜನೆ, ಸಲಹಾ ಸೇವೆ ಮತ್ತು ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಿಗೆ ಸಂಬಂಧಿಸಿದ ಇತರ ಚಟುವಟಿಕೆಗಳಿಂದ ನಿರೀಕ್ಷಿತ ವರಮಾನಗಳು ಮತ್ತು ಇತರ ನಿರೀಕ್ಷಿತ ವರಮಾನಗಳು;

(x) ಘಟಕವೊಂದಕ್ಕೆ ತಗಲುವ ವೆಚ್ಚದ ವಿವರಗಳು, ಆರ್ಥಿಕವಾಗಿ ದುರ್ಬಲವಾದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕ, ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿ ವೇತನದಲ್ಲಿ ನೀಡುವ ರಿಯಾಯಿತಿ ಅಥವಾ ವಿನಾಯತಿಯ ಪರಿಮಿತಿಯ ವಿವರಗಳನ್ನು ಮತ್ತು ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳಿಗೆ ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳು ಪ್ರಾಯೋಜಿಸಿದ ವಿದ್ಯಾರ್ಥಿಗಳಿಗೆ ಮತ್ತು ಭಾರತವನ್ನುಳಿದು ಇತರ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ವಿಧಿಸತಕ್ಕ ಶುಲ್ಕದ ದರಗಳು ಬೇರೆ ಬೇರೆ ಇದ್ದಲ್ಲಿ ಅವುಗಳನ್ನು ಸೂಚಿಸುವ ಶುಲ್ಕ ರಚನೆಯ ವಿವರಗಳು;

(xi) ಸಂಬಂಧಪಟ್ಟ ವಿದ್ಯಾ ವಿಭಾಗದಲ್ಲಿ ಎಷ್ಟು ವರ್ಷಗಳ ಅನುಭವ ಮತ್ತು ಪರಿಣತಿಯನ್ನು ನ್ಯಾಸವು ದೊರಕಿಸಿಕೊಡಲಿದೆ ಹಾಗೂ ಅದರ ಹಣಕಾಸಿನ ಸಂಪನ್ಮೂಲಗಳು;

(xii) ವಿಶ್ವವಿದ್ಯಾಲಯದಲ್ಲಿರುವ ಅಧ್ಯಯನ ಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕಾಗಿ ಇರುವ ವ್ಯವಸ್ಥೆ; ಮತ್ತು

(xiii) ವಿಶ್ವವಿದ್ಯಾಲಯವು ಸ್ಥಾಪನೆಯಾಗುವುದಕ್ಕೆ ಮೊದಲು ನೆರವೇರಿಸಬೇಕೆಂದು ರಾಜ್ಯ ಸರ್ಕಾರವು ಅಗತ್ಯಪಡಿಸಬಹುದಾದ ಅಂಥ ಇತರ ಷರತ್ತುಗಳ ನೆರವೇರಿಕೆಯ ಹಂತ.

(4) ಸ್ವೀಕರಿಸಿದ ಪ್ರಸ್ತಾವಗಳನ್ನು ಪರೀಕ್ಷಿಸಲು ರಾಜ್ಯ ಸರ್ಕಾರವು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಪದನಿಮಿತ್ತ ಸದಸ್ಯರಾದ ಮೂವರು ಸದಸ್ಯರುಗಳನ್ನು ಒಳಗೊಂಡ ಒಂದು ಪರಿಶೋಧನಾ ಸಮಿತಿಯನ್ನು ರಚಿಸತಕ್ಕದ್ದು ಮತ್ತು ಅದು ರಾಜ್ಯ ಸರ್ಕಾರಕ್ಕೆ ಶಿಫಾರಸ್ಸನ್ನು ಮಾಡತಕ್ಕದ್ದು.

**4. ವಿಶ್ವವಿದ್ಯಾಲಯದ ಸ್ಥಾಪನೆ.–** (1) ರಾಜ್ಯ ಸರ್ಕಾರವು, ಪರಿಶೋಧನಾ ಸಮಿತಿಯ ಶಿಫಾರಸ್ಸುಗಳನ್ನು ಪರಿಗಣಿಸಿದ ಮತ್ತು ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ,–

(i) ನ್ಯಾಸವು ಸಾಕಷ್ಟು ಮೂಲ ಸೌಕರ್ಯಗಳನ್ನು ಹೊಂದಿದ್ದು, ಒಂದು ವಿಶ್ವವಿದ್ಯಾಲಯವನ್ನು ನಡೆಸಲು ಸಮರ್ಥವಾಗಿದೆ ಎಂದು ಅದು ಮನಗಂಡರೆ;

(ii) ಪ್ರದೇಶಕ್ಕನುಸಾರವಾಗಿ ಕೆಳಗೆ ನಿರ್ದಿಷ್ಟಪಡಿಸಿದ ವ್ಯಾಪ್ತಿಗೆ ಭೂಮಿಯ ಒಡೆತನವನ್ನು ಹೊಂದಿರತಕ್ಕದ್ದು, ಎಂದರೆ:-

(ಎ) ಭೂಮಿಯ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯೊಳಗಿದ್ದರೆ ಇಪ್ಪತ್ತೈದು ಎಕರೆಗಳು;

(ಬಿ) ಭೂಮಿಯ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯಿಂದ ಹೊರಗೆ ಇದ್ದು ಆದರೆ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಪ್ರದೇಶದೊಳಗೆ ಇದ್ದರೆ ನಲವತ್ತು ಎಕರೆಗಳು;

(ಸಿ) ಭೂಮಿಯ (ಎ) ಮತ್ತು (ಬಿ) ಖಂಡಗಳಲ್ಲಿ ನಿರ್ದಿಷ್ಟಪಡಿಸಿರುವ ಸ್ಥಳಗಳನ್ನು ಹೊರತುಪಡಿಸಿದ್ದರೆ ಅರವತ್ತು ಎಕರೆಗಿಂತ ಕಡಿಮೆ ಇರತಕ್ಕದ್ದಲ್ಲ.

ಮೇಲೆ ನಿರ್ದಿಷ್ಟಪಡಿಸಿರುವ ಭೂಮಿಯು ಏಕ ಘಟಕ (ಸಿಂಗಲ್ ಬ್ಲಾಕ್)ದಲ್ಲಿರತಕ್ಕದ್ದು ಮತ್ತು ಅದು ಸಂಬಂಧಪಟ್ಟ ನ್ಯಾಸ/ಪ್ರತಿಷ್ಠಾನ/ಸಂಸ್ಥೆ/ವಿಶ್ವವಿದ್ಯಾಲಯದ ಹೆಸರಿನಲ್ಲಿಯೇ ಇರತಕ್ಕದ್ದು. 3ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ಅಗತ್ಯಪಡಿಸಲಾದಂತೆ ಒದಗಿಸಿರುವ ವಿವರಗಳ ಆಧಾರದ ಮೇಲೆ, 47ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಲಾದಂತೆ ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಲು ನ್ಯಾಸಕ್ಕೆ ಸರ್ಕಾರವು ನಿರ್ದೇಶಿಸಬಹುದು.

(2) ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಸ್ಥಾಪನೆಯ ತರುವಾಯ, ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, "ಸಿಎಂಆರ್ ವಿಶ್ವವಿದ್ಯಾಲಯ" ಎಂಬ ಹೆಸರಿನ ಏಕಾತ್ಮಕ ಸ್ವರೂಪದ ಒಂದು ವಿಶ್ವವಿದ್ಯಾಲಯವನ್ನು ರಾಜ್ಯದಲ್ಲಿ ಸ್ಥಾಪಿಸುವುದಕ್ಕೆ ಮಂಜೂರಾತಿಯನ್ನು ನೀಡಬಹುದು.

(3) ವಿಶ್ವವಿದ್ಯಾಲಯದ ಕೇಂದ್ರಕಾರ್ಯಸ್ಥಾನವು ಬೆಂಗಳೂರಿನಲ್ಲಿ ಇರತಕ್ಕದ್ದು. ರಾಜ್ಯ ಸರ್ಕಾರದ ಪೂರ್ವಾನುಮತಿಯನ್ನು ಪಡೆದುಕೊಳ್ಳುವುದಕ್ಕೊಳಪಟ್ಟು ಹಾಗೂ ವಿಶ್ವವಿದ್ಯಾಲಯ ಅನುದಾನ ಆಯೋಗದ ಗುಣಮಟ್ಟಗಳಿಗನುಸಾರವಾಗಿ ವಿಶ್ವವಿದ್ಯಾಲಯವು ತನ್ನ ಕ್ಯಾಂಪಸ್ಸುಗಳನ್ನು ಅಥವಾ ಪ್ರಾದೇಶಿಕ ಕೇಂದ್ರಗಳನ್ನು, ಅಧ್ಯಯನ ಕೇಂದ್ರಗಳನ್ನು ಕರ್ನಾಟಕದ ಯಾವುದೇ ಭಾಗದಲ್ಲಿ ಹೊಂದಿರತಕ್ಕದ್ದು.

(4) ಮೊದಲ ಕುಲಾಧಿಪತಿಯವರು, ಮೊದಲ ಸಹಕುಲಾಧಿಪತಿಯವರು, ಮೊದಲ ಕುಲಪತಿಯವರು, ಮೊದಲ ಸಹಕುಲಪತಿಯವರು, ಪ್ರಬಂಧಕ ಮಂಡಳಿಯ ಮೊದಲ ಸದಸ್ಯರುಗಳು, ಕಾರ್ಯನಿರ್ವಹಣಾ ಪರಿಷತ್ತಿನ ಹಾಗೂ ಶೈಕ್ಷಣಿಕ ಪರಿಷತ್ತಿನ ಮೊದಲ ಸದಸ್ಯರುಗಳು ಮತ್ತು ಇನ್ನು ಮುಂದೆ, ಅಂಥ ಅಧಿಕಾರಿಗಳು ಅಥವಾ ಸದಸ್ಯರುಗಳಾಗಬಹುದಾದಂಥ ಎಲ್ಲಾ ವ್ಯಕ್ತಿಗಳು, ಅಂಥ ಪದ ಅಥವಾ ಸದಸ್ಯತ್ವವನ್ನು ಹೊಂದಿರುವುದು ಮುಂದುವರೆಯುವವರೆಗೆ, ಒಂದು ನಿಗಮಿತ ನಿಕಾಯವನ್ನು ರಚಿಸತಕ್ಕದ್ದು ಮತ್ತು ಅದು ವಿಶ್ವವಿದ್ಯಾಲಯದ ಹೆಸರಿನಲ್ಲಿ ದಾವೆ ಹೂಡಬಹುದು ಮತ್ತು ದಾವೆಗೊಳಗಾಗಬಹುದು.

(5) (2)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಸ್ಥಾಪನೆಗೆ ಮಂಜೂರಾತಿ ದೊರೆತ ಮೇಲೆ, ವಿಶ್ವವಿದ್ಯಾಲಯದ ಉದ್ದೇಶಕ್ಕಾಗಿ, ನ್ಯಾಸವು ಆರ್ಜಿಸಿದ, ಸೃಜಿಸಿದ, ಏರ್ಪಾಟು ಮಾಡಿಕೊಂಡ ಅಥವಾ ಕಟ್ಟಲ್ಪಟ್ಟ ಭೂಮಿ ಮತ್ತು ಇತರ ಚರ ಮತ್ತು ಸ್ಥಿರ ಸ್ವತ್ತು, ವಿಶ್ವವಿದ್ಯಾಲಯದಲ್ಲಿ ನಿಹಿತವಾಗಿರತಕ್ಕದ್ದು.

(6) ವಿಶ್ವವಿದ್ಯಾಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂಥ ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

(7) ವಿಶ್ವವಿದ್ಯಾಲಯದಲ್ಲಿನ ಭೂಮಿ, ಕಟ್ಟಡ ಮತ್ತು ಇತರ ಸ್ವತ್ತುಗಳನ್ನು ವಿಶ್ವವಿದ್ಯಾಲಯದ ಉದ್ದೇಶಗಳಿಗೆ ಆನುಷಂಗಿಕವಾಗಿರುವುದನ್ನು ಹೊರತುಪಡಿಸಿ ಇತರ ಯಾವುದೇ ಉದ್ದೇಶಕ್ಕಾಗಿ ಬಳಸತಕ್ಕದ್ದಲ್ಲ.

5. **ಅನುದಾನಗಳು ಮತ್ತು ಹಣಕಾಸು ನೆರವು.–** ವಿಶ್ವವಿದ್ಯಾಲಯವು ಸ್ವಂತ ಧನಮೂಲ ಉಳ್ಳದ್ದಾಗಿರತಕ್ಕದ್ದು ಮತ್ತು ರಾಜ್ಯದಿಂದ ಅಥವಾ ರಾಜ್ಯದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಇತರ ಸಂಸ್ಥೆ ಅಥವಾ ನಿಗಮದಿಂದ ಯಾವುದೇ ನಿರ್ವಹಣಾ ಸಹಾಯ ಅನುದಾನ ಅಥವಾ ಯಾವುದೇ ಹಣಕಾಸು ನೆರವನ್ನು ಹಕ್ಕಿನಿಂದ ಕೇಳತಕ್ಕದ್ದಲ್ಲ ಅಥವಾ ಅದನ್ನು ಪಡೆಯಲು ಹಕ್ಕನ್ನು ಹೊಂದಿರತಕ್ಕದ್ದಲ್ಲ:

ಪರಂತು, ರಾಜ್ಯವು.–

(ಎ) ಇತರ ರಾಜ್ಯ ಸರ್ಕಾರದ ಸಂಘಟನೆಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿರುವಂಥದ್ದೇ ಸಂಶೋಧನೆ, ಅಭಿವೃದ್ಧಿ ಮತ್ತಿತರ ಚಟುವಟಿಕೆಗಳಿಗಾಗಿ; ಅಥವಾ

(ಬಿ) ಸರ್ಕಾರದಿಂದ ನೆರವನ್ನು ಪಡೆಯುವ ಯಾವುದೇ ನಿರ್ದಿಷ್ಟ ಸಂಶೋಧನೆ ಅಥವಾ ಕಾರ್ಯಕ್ರಮಗಳಿಗಾಗಿ; ಮತ್ತು

(ಸಿ) ರಾಜ್ಯ ಕಾರ್ಯನೀತಿಯ ಬದಲಾವಣೆಗೆ ಒಳಪಟ್ಟು ಅಥವಾ ಅನ್ಯಥಾ ಇದೇ ಬಗೆಯ ವಿಶ್ವವಿದ್ಯಾಲಯಗಳಿಗಾಗಿ ಅಥವಾ ಅವುಗಳ ಪ್ರಯೋಜನಕ್ಕಾಗಿ,

–ಅನುದಾನದ ಮೂಲಕ ಅಥವಾ ಅನ್ಯಥಾ ಹಣಕಾಸು ಬೆಂಬಲವನ್ನು ಒದಗಿಸಬಹುದು:

ಪರಂತು, ವಿಶ್ವವಿದ್ಯಾಲಯವು, ಯಾವುದೇ ಇತರ ಮೂಲದಿಂದ ಯಾವುದೇ ಆರ್ಥಿಕ ನೆರವನ್ನು ಸ್ವೀಕರಿಸಬಹುದು.

6. **ಘಟಕ ಕಾಲೇಜು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಅಥವಾ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದಕ್ಕೆ ಅಧಿಕಾರ.–** ವಿಶ್ವವಿದ್ಯಾಲಯದ ಸ್ಥಾಪನೆಯ ತರುವಾಯ ಐದು ವರ್ಷಗಳು ಪೂರ್ಣಗೊಂಡ ಮೇಲೆ, ವಿಶ್ವವಿದ್ಯಾಲಯ ಅನುದಾನ ಆಯೋಗದ ಮತ್ತು ಇತರ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ಗುಣಮಟ್ಟಗಳಿಗೆ ಒಳಪಟ್ಟು, ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ವಿಶ್ವವಿದ್ಯಾಲಯವು, ರಾಜ್ಯದಲ್ಲಿ ತನಗೆ ಸೂಕ್ತವೆನಿಸುವಂಥ ಸ್ಥಳಗಳಲ್ಲಿ ಘಟಕ ಕಾಲೇಜುಗಳು, ಪ್ರಾದೇಶಿಕ ಕೇಂದ್ರಗಳು, ಹೆಚ್ಚುವರಿ ಕ್ಯಾಂಪಸ್‌ಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದಿರಬಹುದು.

7. **ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು.–** ವಿಶ್ವವಿದ್ಯಾಲಯವು, ತನ್ನ ಭವಿಷ್ಯದದೃಷ್ಟಿ ಮತ್ತು ಧ್ಯೇಯೋದ್ದೇಶಗಳನ್ನು ಸಾಧಿಸಲು ಈ ಮುಂದಿನಂತೆ ವಿವಿಧ ಬಗೆಯ ಕಾರ್ಯತಂತ್ರಗಳನ್ನು ಕೈಗೊಳ್ಳಬಹುದು:–

(i) ತಾಂತ್ರಿಕತೆ, ಆರೋಗ್ಯ, ವ್ಯವಸ್ಥಾಪನೆ, ಜೀವ ವಿಜ್ಞಾನಗಳು ಮತ್ತು ಸಂಬಂಧಿತ ವಲಯಗಳಲ್ಲಿ ಸ್ನಾತಕೋತ್ತರ, ಡಾಕ್ಟೊರಲ್ ಮತ್ತು ಪೋಸ್ಟ್ ಡಾಕ್ಟೊರಲ್ ಕೋರ್ಸುಗಳಿಗೆ ಮುಂದುವರಿಯುವ ಮತ್ತು ಅವುಗಳನ್ನು ಒಳಗೊಳ್ಳುವ ವಿಶ್ವವಿದ್ಯಾಲಯ ಶಿಕ್ಷಣದಲ್ಲಿ ಪ್ರಗತಿಯನ್ನು ಮತ್ತು ಅನ್ವೇಷಣೆಯನ್ನು ಬೆಂಬಲಿಸುವುದು, ಪ್ರೋತ್ಸಾಹಿಸುವುದು ಮತ್ತು ಕೈಗೊಳ್ಳುವುದು ಹಾಗೂ ಈ ಕ್ಷೇತ್ರಗಳಲ್ಲಿ ಸಲಹೆಯನ್ನೂ ಒಳಗೊಂಡಂತೆ ಸಂಶೋಧನೆ, ಪ್ರಗತಿ ಮತ್ತು ಪ್ರಸಾರಕ್ಕೆ ಅವಕಾಶವನ್ನು ಕಲ್ಪಿಸುವುದು;

(ii) ವಿದ್ಯಾರ್ಥಿಗಳಿಗೆ, ಬೋಧಕ ವೃಂದದ (ಫ್ಯಾಕಲ್ಟಿ) ಸದಸ್ಯರಿಗೆ ಮತ್ತು ಇತರರಿಗೆ ನಿರ್ದಿಷ್ಟ ಶೈಕ್ಷಣಿಕ ಮತ್ತು ಸಂಶೋಧನಾ ಕಾರ್ಯಕ್ರಮಗಳನ್ನು, ತರಬೇತಿ ಕಾರ್ಯಕ್ರಮಗಳನ್ನು ಮತ್ತು ವಿನಿಮಯ ಕಾರ್ಯಕ್ರಮಗಳನ್ನು ಪರಿಕಲ್ಪಿಸಲು, ವಿನ್ಯಾಸಗೊಳಿಸಲು, ಅಭಿವೃದ್ಧಿಪಡಿಸಲು ಇತರ ಯಾವುದೇ ವಿಶ್ವವಿದ್ಯಾಲಯಗಳು, ಸಂಶೋಧನಾ ಸಂಸ್ಥೆಗಳು, ಲಾಭರಹಿತ ಸಂಸ್ಥೆಗಳು, ಕೈಗಾರಿಕಾ ಸಂಸ್ಥೆಗಳು, ವೃತ್ತಿಪರ ಸಂಸ್ಥೆಗಳು ಅಥವಾ ಇತರ ಸಂಸ್ಥೆಗಳೊಂದಿಗೆ ಸಹಯೋಗವನ್ನು ಹೊಂದುವುದು;

(iii) ರಾಜ್ಯ ಸರ್ಕಾರದ ಪೂರ್ವ ಅನುಮೋದನೆಯೊಡನೆ, ಯಾವುದೇ ಸಂಸ್ಥೆಗಳೊಂದಿಗೆ ಸಹಯೋಗ ಹೊಂದಿ ಸಂಶೋಧನೆಯನ್ನು ಮತ್ತು ಹೊಸತನವನ್ನು ಬೆಳಕಿಗೆ ತರುವುದು;

(iv) ತಾನು ಸೂಕ್ತವೆಂದು ಭಾವಿಸಬಹುದಾದಂತೆ, ಕಲಿಕೆಯ ಅಂಥ ಶಾಖೆಗಳಲ್ಲಿ ಬೋಧನಾ ಮತ್ತು ಸಂಶೋಧನಾ ಸೌಲಭ್ಯಗಳನ್ನು ಒದಗಿಸಿ ಜ್ಞಾನ ಪ್ರಸಾರ ಮಾಡುವುದು ಮತ್ತು ಅದನ್ನು ಮುಂದುವರೆಸುವುದು ಹಾಗೂ ವಿಶೇಷವಾಗಿ ತಾಂತ್ರಿಕ, ಆರೋಗ್ಯ, ವ್ಯವಸ್ಥಾಪನೆ, ಜೀವ ವಿಜ್ಞಾನಗಳು ಮತ್ತು ಸಂಬಂಧಿತ ಕೋರ್ಸುಗಳಲ್ಲಿ ಸಮಗ್ರ ವ್ಯಾಸಂಗ ವಿಷಯಗಳಿಗಾಗಿ ವಿಶೇಷ ಉಪಬಂಧ ಕಲ್ಪಿಸುವುದು ಮತ್ತು ವಿಶ್ವವಿದ್ಯಾಲಯದಲ್ಲಿ ಅಂತರವಿದ್ಯಾವಿಷಯಗಳ ಅಧ್ಯಯನ ಮತ್ತು ಸಂಶೋಧನೆಗೆ ಉತ್ತೇಜನ ನೀಡುವುದಕ್ಕಾಗಿ ಸೂಕ್ತ ಕ್ರಮ ಕೈಗೊಳ್ಳುವುದು;

(v) ಇಂಜಿನಿಯರಿಂಗ್ ಪರಿಹಾರಗಳನ್ನೊದಗಿಸುವ ಭವಿಷ್ಯದ ಸಮರ್ಥವಾದ ತಾಂತ್ರಿಕತೆಗಳ ಸಂಶೋಧನೆಯೊಂದಿಗೆ ಮತ್ತು ತಾಂತ್ರಿಕ ವ್ಯವಹಾರ ಮತ್ತು ಬೆಳೆಯುತ್ತಿರುವ ತಾಂತ್ರಿಕತೆಗೆ ಬೆಂಬಲದೊಂದಿಗೆ ಉನ್ನತ ತಾಂತ್ರಿಕ ಮತ್ತು ವೃತ್ತಿಪರ ಕೈಗಾರಿಕೆಗಳ ಬೇಡಿಕೆಗಳನ್ನು ಈಡೇರಿಸುವುದು;

(vi) ಉನ್ನತ ಕಲಿಕೆಗೆ ಪ್ರವೇಶಾವಕಾಶಗಳನ್ನು ಮತ್ತು ನ್ಯಾಯಸಮ್ಮತತೆಗೆ ಉತ್ತೇಜನ ನೀಡುವ ದೃಷ್ಟಿಯಿಂದ, ಕಲಿಕೆಯ ವಿಧಾನಗಳು ಮತ್ತು ಸ್ಥಳಗಳು, ವ್ಯಾಸಂಗ ಕ್ರಮಗಳ ಸಂಯೋಜನೆ, ದಾಖಲಾತಿಗಾಗಿ ಅರ್ಹತೆ, ಪ್ರವೇಶದ ವಯಸ್ಸು, ಪರೀಕ್ಷೆಯನ್ನು ನಡೆಸುವುದು ಮತ್ತು ಕಾರ್ಯಕ್ರಮಗಳ ನಿರ್ವಹಣೆಗೆ ಸಂಬಂಧಿಸಿದಂತೆ ನಮ್ಯವಾದ (ಫ್ಲೆಕ್ಸಿಬಲ್) ಮತ್ತು ಮುಕ್ತವಾದ, ವಿಶ್ವವಿದ್ಯಾಲಯ ಮಟ್ಟದ ಶಿಕ್ಷಣದ ಅನ್ವೇಷಣಾ ಪದ್ಧತಿಯನ್ನು ಅಳವಡಿಸುವುದು ಹಾಗೂ ಜ್ಞಾನದ ಹೊಸ ಕ್ಷೇತ್ರಗಳಲ್ಲಿ ಉತ್ಕೃಷ್ಟತೆಗೆ ಪ್ರೋತ್ಸಾಹಿಸುವುದು, ಶೈಕ್ಷಣಿಕ ಮತ್ತು ಸಮನ್ವಯ ಕಲಿಕೆ, ಇವೆರಡಕ್ಕೂ ಸಮನಾದ ಪ್ರಾಮುಖ್ಯತೆಯನ್ನು ನೀಡುವುದು;

2

(vii) ಗುಣಮಟ್ಟದ ಶಿಕ್ಷಣಕ್ಕಾಗಿ ಕೊಡುಗೆಯನ್ನು ನೀಡಲು ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಸಂಪನ್ಮೂಲ ಕೇಂದ್ರಗಳನ್ನು ಅಭಿವೃದ್ಧಿಪಡಿಸುವುದು;

(viii) ಕರ್ನಾಟಕದಲ್ಲಿ ವಿವಿಧ ಸ್ಥಳಗಳಲ್ಲಿ ಕ್ಯಾಂಪಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳು ಮತ್ತು ಸಂಯೋಜಿತ ಕಾಲೇಜುಗಳನ್ನು ಸ್ಥಾಪಿಸುವುದು ಮತ್ತು ತಾಂತ್ರಿಕತೆ, ವೃತ್ತಿಪರತೆ, ಸಾಮಾನ್ಯ ಶಿಕ್ಷಣ ಮತ್ತು ಸಮಾಜ ಮತ್ತು ಮಾನವ ಅಭಿವೃದ್ಧಿಯಲ್ಲಿ ಶೈಕ್ಷಣಿಕ ಬದಲಾವಣೆಗೆ ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಕೊಡುಗೆ ನೀಡುವುದು ಮತ್ತು ಜ್ಞಾನವನ್ನು ಅಭಿವೃದ್ಧಿಪಡಿಸುವುದು;

(ix) ಮೌಲ್ಯಮಾಪನದ ವಿವಿಧ ಆಧುನಿಕ ವಿಧಾನಗಳ ಮೂಲಕ ಮಾಡಿದ ಮೌಲ್ಯಮಾಪನಕ್ಕೆ ಅನುಸಾರವಾಗಿ ಶಿಕ್ಷಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದುದರ ಆಧಾರದ ಮೇಲೆ ನೀಡಲು ಪದವಿಗಳನ್ನು, ಡಿಪ್ಲೋಮೋಗಳನ್ನು, ಪ್ರಮಾಣಪತ್ರಗಳನ್ನು ಮತ್ತು ಯಶೋಪತ್ರ ಪ್ರದಾನದಂಥ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(x) ಉಪನ್ಯಾಸ ಮಾಲಿಕೆಗಳು, ವಿಚಾರ ಸಂಕಿರಣಗಳು, ಸಮ್ಮೇಳನಗಳು, ಕಾರ್ಯಾಂಗ ಶಿಕ್ಷಣ ಕಾರ್ಯಕ್ರಮಗಳು, ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳು, ಪ್ರಕಟಣೆಗಳು ಮತ್ತು ತರಬೇತಿ ಕಾರ್ಯಕ್ರಮಗಳು ಮತ್ತು ಕಾರ್ಯಸೂಚಿಗಳ ಮೂಲಕ ಜ್ಞಾನ ಪ್ರಸಾರ ಮಾಡುವುದು ಮತ್ತು ಶಿಕ್ಷಣ ಮತ್ತು ತತ್ಸಂಬಂಧಿತ ಅಭಿವೃದ್ಧಿ ಕ್ಷೇತ್ರಗಳ ವಿಷಯಗಳ ಬಗ್ಗೆ ಸಾರ್ವಜನಿಕ ಚರ್ಚೆಯನ್ನು ಏರ್ಪಡಿಸುವುದು;

(xi) ರಾಜ್ಯ ಸರ್ಕಾರದ ಪೂರ್ವ ಅನುಮತಿಯೊಂದಿಗೆ, ಉತ್ತಮ ಗುಣಮಟ್ಟದ ಇತರ ಯಾವುವೇ ವಿಶ್ವವಿದ್ಯಾಲಯಗಳೊಂದಿಗೆ ಸಹಭಾಗಿಗಳಾಗಿ ವಿಶ್ವವಿದ್ಯಾಲಯದ ಬೋಧಕ ವೃಂದ (ಫ್ಯಾಕಲ್ಟಿ) ಮತ್ತು ಸಂಶೋಧಕರ ಅಭಿವೃದ್ಧಿ ಮತ್ತು ತರಬೇತಿಗಾಗಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು;

(xii) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದಕ್ಕಾಗಿ ಮತ್ತು ಉತ್ತೇಜಿಸುವುದಕ್ಕಾಗಿ ಅವಶ್ಯಕವಾದ ಮತ್ತು ಯುಕ್ತವಾದ ಕ್ರಮಗಳನ್ನು ಕೈಗೊಳ್ಳುವುದು;

(xiii) ಭಾರತದಲ್ಲಿ ಶಿಕ್ಷಣ ಮತ್ತು ಇತರ ಅಭಿವೃದ್ಧಿ ವಲಯಗಳನ್ನು ವಿಸ್ತರಿಸುವುದಕ್ಕಾಗಿ ಸರ್ಕಾರವು ಅನುಮೋದಿಸಬಹುದಾದಂತೆ ಯಾವುವೇ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದು.

**8. ವಿಶ್ವವಿದ್ಯಾಲಯದ ಅಧಿಕಾರಗಳು.–** ವಿಶ್ವವಿದ್ಯಾಲಯವು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗೆ ಅನುಸಾರವಾಗಿ ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ \ ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿರ್ಧರಿಸಬಹುದಾದಂತೆ ಕ್ಯಾಂಪಸ್ಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಕರ್ನಾಟಕದಲ್ಲಿ ಸ್ಥಾಪಿಸುವುದು ಮತ್ತು ನಿರ್ವಹಿಸುವುದು;

(ii) ವಿಶ್ವವಿದ್ಯಾಲಯದ ಉದ್ದೇಶವನ್ನು ಕಾರ್ಯರೂಪಕ್ಕೆ ತರುವಲ್ಲಿ ಅಗತ್ಯವಾಗಬಹುದಾದ ಅಥವಾ ಕಾರ್ಯಸಾಧ್ಯವಾಗಬಹುದಾದ ಎಲ್ಲಾ ಅಂಥ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು;

(iii) ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಮತ್ತು ಷರತ್ತುಗಳಿಗೊಳಪಟ್ಟು ಪದವಿಗಳು ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರದಾನಮಾಡುವುದು;

(iv) ಪರಿನಿಯಮಗಳನ್ವಯ ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿ ವೇತನಗಳು ಮತ್ತು ಬಹುಮಾನಗಳು, ಅವಾರ್ಡುಗಳು, ಪಾರಿತೋಷಕಗಳು ಇತ್ಯಾದಿಗಳನ್ನು ಸ್ಥಾಪಿಸುವುದು ಮತ್ತು ನೀಡುವುದು;

(v) ಪರಿನಿಯಮಗಳಲ್ಲಿ ಅಥವಾ ಸಂದರ್ಭಾನುಸಾರವಾಗಿ ನಿಯಮಗಳಲ್ಲಿ ನಿಗದಿಪಡಿಸಬಹುದಾದ ಅಂಥ ಶುಲ್ಕಗಳು, ಬಿಲ್ಲುಗಳು, ಖರೀದಿ ಪಟ್ಟಿಗಳನ್ನು ಕೇಳಿಪಡೆದುಕೊಳ್ಳುವುದು ಮತ್ತು ಸ್ವೀಕರಿಸುವುದು ಹಾಗೂ ಚಾರ್ಜುಗಳನ್ನು ವಸೂಲು ಮಾಡುವುದು;

(vi) ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಪಠ್ಯೇತರ ಚಟುವಟಿಕೆಗಳಿಗೆ ಅವಕಾಶಗಳನ್ನು ಕಲ್ಪಿಸುವುದು;

(vii) ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಕ್ಯಾಂಪಸುಗಳ, ಪ್ರಾದೇಶಿಕ ಕೇಂದ್ರಗಳ, ಅಧ್ಯಯನ ಕೇಂದ್ರಗಳ ಫ್ಯಾಕಲ್ಟಿ, ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವುದು;

(viii) ವಿಶ್ವವಿದ್ಯಾಲಯದ ಅಥವಾ ಒಂದು ಘಟಕ ಕಾಲೇಜಿನ ಅಥವಾ ಕ್ಯಾಂಪಸ್ಸಿನ, ಪ್ರಾದೇಶಿಕ ಕೇಂದ್ರದ, ಅಧ್ಯಯನ ಕೇಂದ್ರದ ಉದ್ದೇಶಕ್ಕಾಗಿ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದಿರುವ, ಯಾವುದೇ ರೀತಿಯ ಸ್ವಯಂ ದೇಣಿಗೆಗಳು ಮತ್ತು ಕೊಡುಗೆಗಳನ್ನು ಸ್ವೀಕರಿಸುವುದು ಮತ್ತು ನ್ಯಾಸ ಮತ್ತು ದತ್ತಿ ಸ್ವತ್ತುಗಳೂ ಸೇರಿದಂತೆ, ಯಾವುದೇ ಚರ ಅಥವಾ ಸ್ಥಿರ ಸ್ವತ್ತನ್ನು ಆರ್ಜಿಸುವುದು, ಹೊಂದಿರುವುದು, ನಿರ್ವಹಿಸುವುದು, ನಡೆಸುವುದು ಮತ್ತು ಹಸ್ತಾಂತರ ಮಾಡುವುದು;

(ix) ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸಿಕೊಂಡು ಬರುವುದು ಹಾಗೂ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ ವಿದ್ಯಾರ್ಥಿಗಳಿಗೆ ವಸತಿ ಸ್ಥಳಗಳಾಗಿ ಮಾನ್ಯತೆ ನೀಡುವುದು;

(x) ವಸತಿಯ ಮೇಲ್ವಿಚಾರಣೆ ಮಾಡುವುದು ಮತ್ತು ನಿಯಂತ್ರಣ ಮಾಡುವುದು ಹಾಗೂ ವಿದ್ಯಾರ್ಥಿಗಳು ಮತ್ತು ಎಲ್ಲಾ ಪ್ರವರ್ಗಗಳ ಸಿಬ್ಬಂದಿಗಳಲ್ಲಿ ಶಿಸ್ತು ನಿಯಂತ್ರಣ ಮಾಡುವುದು ಮತ್ತು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ನಡತೆ ಸಂಹಿತೆಯನ್ನು ರೂಪಿಸುವುದೂ ಒಳಗೊಂಡಂತೆ, ಅಂಥ ಸಿಬ್ಬಂದಿಗಳ ಸೇವಾಷರತ್ತುಗಳನ್ನು ನಿರೂಪಿಸುವುದು;

(xi) ಶೈಕ್ಷಣಿಕ, ಆಡಳಿತಾತ್ಮಕ ಮತ್ತು ಬೆಂಬಲ ಸಿಬ್ಬಂದಿಯ ಹುದ್ದೆಗಳನ್ನು ಮತ್ತು ಇತರ ಅವಶ್ಯ ಹುದ್ದೆಗಳನ್ನು ಸೃಜಿಸುವುದು;

(xii) ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ಉದ್ದೇಶಗಳಿಗಾಗಿ ಇತರ ವಿಶ್ವವಿದ್ಯಾಲಯಗಳೊಡನೆ ಸಹಕರಿಸುವುದು ಮತ್ತು ಸಹಯೋಗ ಹೊಂದುವುದು;

(xiii) ಶಿಕ್ಷಕರಿಗೆ, ಪಾಠಗಳನ್ನು ರಚಿಸುವವರಿಗೆ, ಮೌಲ್ಯಮಾಪಕರಿಗೆ ಮತ್ತಿತರ ಶೈಕ್ಷಣಿಕ ಸಿಬ್ಬಂದಿಗೆ ಪುನರ್ಮನನ ವ್ಯಾಸಂಗಕ್ರಮಗಳು, ಅಭಿಮುಖ ವ್ಯಾಸಂಗ ಕ್ರಮಗಳು, ಕಾರ್ಯಾಗಾರಗಳು, ವಿಚಾರಗೋಷ್ಠಿಗಳು ಮತ್ತಿತರ ಕಾರ್ಯಕ್ರಮಗಳನ್ನು ಏರ್ಪಡಿಸುವುದು ಮತ್ತು ನಡೆಸುವುದು;

(xiv) ಶೈಕ್ಷಣಿಕ ಪರಿಷತ್ತಿನ ಅನುಮೋದನೆಯೊಂದಿಗೆ ವಿಶ್ವವಿದ್ಯಾಲಯಕ್ಕೆ ಅಥವಾ ಘಟಕ ಕಾಲೇಜಿಗೆ, ಪ್ರಾದೇಶಿಕ ಕೇಂದ್ರಗಳಿಗೆ, ಅಧ್ಯಯನ ಕೇಂದ್ರಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮತ್ತು ಈ ಅಧಿನಿಯಮದಲ್ಲಿ ಕಲ್ಪಿಸಿದ ವ್ಯಾಪ್ತಿಗಿಂತ ಕಡಿಮೆಯಿಲ್ಲದಂತೆ ಕರ್ನಾಟಕದ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮಾನಕ ಗುಣಮಟ್ಟಗಳನ್ನು ನಿರ್ಧರಿಸುವುದು;

(xv) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಕಾರ್ಯರೂಪಕ್ಕೆ ತರಲು ಅವಶ್ಯವಾಗಬಹುದಾದಂಥ ಇತರ ಎಲ್ಲಾ ಕ್ರಮಗಳನ್ನು ಅಥವಾ ಕಾರ್ಯಗಳನ್ನು, ಅವು ಮೇಲೆ ಹೇಳಿದ ಅಧಿಕಾರಗಳಿಗೆ ಪ್ರಾಸಂಗಿಕವಾಗಿರಲಿ ಅಥವಾ ಇಲ್ಲದಿರಲಿ, ಕೈಗೊಳ್ಳುವುದು;

(xvi) ಪರೀಕ್ಷೆಗಳ ಆಧಾರದ ಮೇಲೆ ಅಥವಾ ಸರ್ಕಾರದಿಂದ ಅನುಮೋದಿತವಾದ ಇತರ ಯಾವುದೇ ಮೌಲ್ಯಮಾಪನ ವಿಧಾನದ ಆಧಾರದ ಮೇಲೆ ನೀಡಲು ಪದವಿಗಳು, ಡಿಪ್ಲೋಮಾಗಳು, ಪ್ರಮಾಣಪತ್ರಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಸ್ಥಾಪಿಸುವುದು;

(xvii) ಫಿಲಂಗಳು, ಕ್ಯಾಸೆಟ್‌ಗಳು, ಧ್ವನಿಸುರುಳಿಗಳು, ದೃಶ್ಯಸುರುಳಿಗಳು, ಸಿ.ಡಿ., ವಿ.ಸಿ.ಡಿ. ಮತ್ತು ಇತರ ತಂತ್ರಾಂಶಗಳೂ ಹಾಗೂ ಇತರ ಸಂಬಂಧಿತ ವಿದ್ಯುನ್ಮಾನ ಮತ್ತು ಮುದ್ರಣ ಮಾಧ್ಯಮ ಸೇರಿದಂತೆ ಬೋಧಕ ಸಾಮಗ್ರಿಗಳನ್ನು ತಯಾರಿಸುವುದಕ್ಕಾಗಿ ಅವಕಾಶ ಕಲ್ಪಿಸುವುದು;

(xviii) ಪ್ರಬಂಧಕ ಮಂಡಳಿಯ ಅನುಮೋದನೆಯೊಡನೆ ವಿಶ್ವವಿದ್ಯಾಲಯದ ಉದ್ದೇಶಗಳಿಗಾಗಿ ವಿಶ್ವವಿದ್ಯಾಲಯದ ಸ್ವತ್ತುಗಳನ್ನು ಭದ್ರತೆಯಾಗಿ ನೀಡಿ ಅಥವಾ ನೀಡದೆ ಹಣವನ್ನು ಪಡೆಯುವುದು, ಸಂಗ್ರಹಿಸುವುದು, ಚಂದಾದಾರರಾಗುವುದು ಮತ್ತು ಸಾಲ ಪಡೆಯುವುದು;

(xix) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುದೇ ಇತರ ಶೈಕ್ಷಣಿಕ ಸಂಸ್ಥೆಗಳ ಆಡಳಿತವನ್ನು ವಶಪಡಿಸಿಕೊಳ್ಳುವುದು, ವಹಿಸಿಕೊಳ್ಳುವುದು ಮತ್ತು ನಡೆಸುವುದು;

(xx) ಕಾರ್ಯಕಾರಿ ಪರಿಷತ್ತು ಪೂರ್ವಾನುಮೋದನೆಯೊಂದಿಗೆ ಸ್ವತ್ತುಗಳನ್ನು ಆರ್ಜಿಸುವುದು;

(xxi) ವಿಶ್ವವಿದ್ಯಾಲಯದ ಮೇಲಿನ ಉದ್ದೇಶಗಳಿಗೆ ಸಂಬಂಧಿಸಿದ ಅಥವಾ ಪ್ರಾಸಂಗಿಕವಾದ ಯಾವುದೇ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು.

**9. ವಿಶ್ವವಿದ್ಯಾಲಯವು ಎಲ್ಲಾ ವರ್ಗಗಳು, ಜಾತಿಗಳು, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲರಿಗೂ ಮುಕ್ತವಾಗಿರತಕ್ಕದ್ದು.**- ವಿಶ್ವವಿದ್ಯಾಲಯದ ಪ್ರವೇಶಗಳು ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲಾ ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು. ಎಲ್ಲಾ ಪ್ರವೇಶಗಳನ್ನು ಅರ್ಹತಾ ಪರೀಕ್ಷೆಗಳಲ್ಲಿನ ಅರ್ಹತೆಯ ಆಧಾರದ ಮೇಲೆ ಮಾಡತಕ್ಕದ್ದು:

ಪರಂತು, ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳ ಪ್ರವೇಶದಲ್ಲಿ ಶೇಕಡಾ ನಲವತ್ತರಷ್ಟನ್ನು ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ಮೀಸಲಿಡತಕ್ಕದ್ದು ಮತ್ತು ಪ್ರವೇಶಗಳನ್ನು ರಾಜ್ಯ ಸರ್ಕಾರವು ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡತಕ್ಕದ್ದು ಮತ್ತು ಸೀಟುಗಳನ್ನು ಅರ್ಹತೆ ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ರೂಪಿಸುವ ಮೀಸಲಾತಿ ನೀತಿಗೆ ಅನುಸಾರವಾಗಿ ಹಂಚಿಕೆ ಮಾಡತಕ್ಕದ್ದು:

ಮತ್ತು ಪರಂತು, ಯಾವುದೇ ಕೋರ್ಸಿನಲ್ಲಿ ಹತ್ತಕ್ಕಿಂತ ಕಡಿಮೆ ಸೀಟುಗಳು ಇರುವಲ್ಲಿ, ಸ್ನಾತಕೋತ್ತರ, ಇಂಥ ಕೋರ್ಸುಗಳನ್ನು ಒಟ್ಟಿಗೆ ಒಂದುಗೂಡಿಸುವ ಮೂಲಕ ಮೀಸಲಿಡತಕ್ಕದ್ದು ಮತ್ತು ಯಾವುದೇ ಕೋರ್ಸಿನಲ್ಲಿ ಮೂರು ಸೀಟುಗಳಿಗಿಂತ ಕಡಿಮೆ ಇರುವಲ್ಲಿ, ಅವುಗಳನ್ನು ಸುತ್ತು ಸರದಿಯಲ್ಲಿ ಮೀಸಲಿಡತಕ್ಕದ್ದು.

**10. ರಾಷ್ಟ್ರೀಯ ಅಧಿಮಾನ್ಯತೆ.**- ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಆದಷ್ಟು ಬೇಗನೆ ಸಂಬಂಧಪಟ್ಟ ಶಾಸನಾತ್ಮಕ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳಿಂದ ಅಧಿಮಾನ್ಯತೆಯನ್ನು ಕೋರತಕ್ಕದ್ದು. ಖಾಸಗಿ ವಿಶ್ವವಿದ್ಯಾಲಯಗಳು ನಡೆಸುವ ಎಲ್ಲಾ ಕೋರ್ಸುಗಳು ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಯ ವಿನಿಯಮಗಳಿಗನುಸಾರವಾಗಿರತಕ್ಕದ್ದು.

**11. ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು.–** ಪ್ರಾಯೋಜಕ ಸಂಸ್ಥೆಯು ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದಂತೆ ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಇವುಗಳಲ್ಲಿ ಪ್ರತಿಯೊಂದನ್ನು ಈ ಅಧಿನಿಯಮದಲ್ಲಿ ಉಪಬಂಧಿಸಲಾದಂತೆ ಪ್ರಾಯೋಜಕ ಸಂಸ್ಥೆಯು ಚಲಾಯಿಸಬಹುದು, ಎಂದರೆ:–

(i) ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಪುನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(ii) ವಿಶ್ವವಿದ್ಯಾಲಯದ ಪ್ರಥಮ ಪ್ರಬಂಧಕ ಮಂಡಳಿಯನ್ನು ರಚಿಸುವುದು;

(iii) ಪ್ರಬಂಧಕ ಮಂಡಳಿಯ ಅಧ್ಯಕ್ಷರನ್ನು ನಾಮನಿರ್ದೇಶಿಸುವುದು;

(iv) ಪ್ರಬಂಧಕ ಮಂಡಳಿಯ ಸದಸ್ಯರಾಗಿ ಮೂವರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(v) ಕಾರ್ಯನಿರ್ವಹಣಾ ಪರಿಷತ್ತಿನ ಸದಸ್ಯರಾಗಿ ಇಬ್ಬರು ವ್ಯಕ್ತಿಗಳನ್ನು ನಾಮ ನಿರ್ದೇಶಿಸುವುದು;

(vi) ವಿಶ್ವವಿದ್ಯಾಲಯದ ದತ್ತಿ ನಿಧಿಗೆ ದೇಣಿಗೆ ನೀಡಲು ನಿಧಿ ಮೂಲಗಳನ್ನು ನಿರ್ಧರಿಸುವುದು;

(vii) ವಿಶ್ವವಿದ್ಯಾಲಯದ ಹಣದ ವಿನಿಯೋಗ ಮತ್ತು ವೆಚ್ಚ ಮಾಡುವುದನ್ನು ನಿರ್ಧರಿಸುವುದು;

(viii) ಪ್ರಬಂಧಕ ಮಂಡಳಿಯ ಸಭೆಯಲ್ಲಿಯ ಯಾವುವೇ ವಿವಾದಗಳನ್ನು ಈ ಅಧಿನಿಯಮದಲ್ಲಿ ಉಪಬಂಧಿಸಿರುವ ವಿಧಾನದಲ್ಲಿ ಬಗೆಹರಿಸುವುದು;

## ಅಧ್ಯಾಯ – III

## ವಿಶ್ವವಿದ್ಯಾಲಯದ ಅಧಿಕಾರಿಗಳು

**12. ವಿಶ್ವವಿದ್ಯಾಲಯದ ಅಧಿಕಾರಿಗಳು.–** ಈ ಮುಂದಿನವರು ವಿಶ್ವವಿದ್ಯಾಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:–

(i) ಸಂದರ್ಶಕರು;

(ii) ಸಹ–ಸಂದರ್ಶಕರು;

(iii) ಕುಲಾಧಿಪತಿಗಳು;

(iv) ಕುಲಪತಿಗಳು;

(v) ಸಹ–ಕುಲಪತಿಗಳು;

(vi) ಕುಲಸಚಿವರು;

(vii) ಹಣಕಾಸು ಅಧಿಕಾರಿ; ಮತ್ತು

(viii) ಪರಿನಿಯಮಗಳ ಮೂಲಕ ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಘೋಷಿಸಬಹುದಾದ ಅಂಥ ಇತರ ಅಧಿಕಾರಿಗಳು.

**13. ಸಂದರ್ಶಕರು.–** (1) ಕರ್ನಾಟಕದ ಘನತೆವೆತ್ತ ರಾಜ್ಯಪಾಲರು ವಿಶ್ವವಿದ್ಯಾಲಯದ ಸಂದರ್ಶಕರಾಗಿರತಕ್ಕದ್ದು ಮತ್ತು ಸಂದರ್ಶಕರು ವಿಶ್ವವಿದ್ಯಾಲಯದ ಕಾರ್ಯನಿರ್ವಹಣೆಯ ಸುಧಾರಣೆಗಾಗಿ ಸಲಹೆಗಳನ್ನು ನೀಡಬಹುದು.

(2) ಸಂದರ್ಶಕರು, ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಸಂದರ್ಶಕರು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ವ್ಯವಹಾರಗಳಿಗೆ ಸಂಬಂಧಿಸಿದಂತೆ, ಯಾವುದೇ ಪತ್ರ ಅಥವಾ ಮಾಹಿತಿಯನ್ನು ತರಿಸಿಕೊಳ್ಳುವುದು;

(ii) ಸಂದರ್ಶಕರು, ಅವರು ಸ್ವೀಕರಿಸಿದ ಮಾಹಿತಿಯ ಆಧಾರದ ಮೇಲೆ ವಿಶ್ವವಿದ್ಯಾಲಯಗಳ ಯಾವುದೇ ಪ್ರಾಧಿಕಾರವು ಮಾಡಿದ ಯಾವುದೇ ಆದೇಶ, ನಡೆಸಿದ ವ್ಯವಹರಣೆಗಳು ಅಥವಾ ಕೈಗೊಂಡ ತೀರ್ಮಾನಗಳು, ಈ ಅಧಿನಿಯಮಕ್ಕೆ, ವಿನಿಯಮಗಳಿಗೆ ಅಥವಾ ನಿಯಮಗಳಿಗೆ ಪೂರಕವಾಗಿಲ್ಲವೆಂದು ಮನಗಂಡರೆ ಅವರು ವಿಶ್ವವಿದ್ಯಾಲಯದ ಹಿತಾಸಕ್ತಿಯಿಂದ ತಾವು ಸೂಕ್ತವೆಂದು ಭಾವಿಸಬಹುದಾದ ಅಂಥ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಹಾಗೆ ಹೊರಡಿಸಿದ ನಿರ್ದೇಶನಗಳನ್ನು ಸಂಬಂಧಪಟ್ಟವರೆಲ್ಲರೂ ಪಾಲಿಸತಕ್ಕದ್ದು.

**14. ಸಹ–ಸಂದರ್ಶಕರು.–** (1) ಕರ್ನಾಟಕ ಸರ್ಕಾರದ ಮಾನ್ಯ ಉನ್ನತ ಶಿಕ್ಷಣ ಸಚಿವರು ವಿಶ್ವವಿದ್ಯಾಲಯದ ಸಹ–ಸಂದರ್ಶಕರಾಗಿರತಕ್ಕದ್ದು.

(2) ಸಂದರ್ಶಕರ ಅನುಪಸ್ಥಿತಿಯಲ್ಲಿ ಸಹ–ಸಂದರ್ಶಕರು ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**15. ಕುಲಾಧಿಪತಿಗಳು.–** (1) ಕುಲಾಧಿಪತಿಯವರನ್ನು ಪ್ರಾಯೋಜಕ ಸಂಸ್ಥೆಯು ನೇಮಿಸತಕ್ಕದ್ದು.

(2) ಪ್ರಾಯೋಜಕ ಸಂಸ್ಥೆಯ ಹಾಲಿ ಮುಖ್ಯಸ್ಥರು ಮೊದಲನೇ ಕುಲಾಧಿಪತಿಗಳಾಗಿರತಕ್ಕದ್ದು, ಅವರು ತಮ್ಮ ಜೀವನಪರ್ಯಂತ ಅಥವಾ ಅವರು ತಮ್ಮ ಪದವನ್ನು ಬಿಟ್ಟುಕೊಡುವವರೆಗೆ ಪದಧಾರಣ ಮಾಡಿರತಕ್ಕದ್ದು.

(3) ತದನಂತರದ ಕುಲಾಧಿಪತಿಗಳು, ಅಂಥ ನೇಮಕಾತಿಯನ್ನು ಪರಿಗಣಿಸುವ ಸಂದರ್ಭದಲ್ಲಿ ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ, ಪ್ರಾಯೋಜಕ ಸಂಸ್ಥೆಯ ಸದಸ್ಯನಾಗಿರತಕ್ಕದ್ದು ಅಥವಾ ಶಿಕ್ಷಣ, ವಿಜ್ಞಾನ, ಸಂಸ್ಕೃತಿ ಅಥವಾ ಸಾರ್ವಜನಿಕ ಜೀವನ ಕ್ಷೇತ್ರಗಳಲ್ಲಿ ರಾಷ್ಟ್ರೀಯ ಮಟ್ಟದ ಛಾಪನ್ನು ಪಡೆದಿರುವ ಅಂಥ ಇತರ ವ್ಯಕ್ತಿಯಾಗಿರತಕ್ಕದ್ದು.

(4) ಹಾಗೆ ನೇಮಕಗೊಂಡ ತದನಂತರದ ಕುಲಾಧಿಪತಿಗಳು ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ಪದಧಾರಣ ಮಾಡತಕ್ಕದ್ದು.

(5) ಕುಲಾಧಿಪತಿಗಳು ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳ ಅಡಿಯಲ್ಲಿ ಅವರಿಗೆ ಪ್ರದಾನ ಮಾಡಬಹುದಾದ ಅಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು, ಅವುಗಳಲ್ಲಿ ಈ ಮುಂದಿನ ಅಧಿಕಾರಗಳು ಒಳಗೊಂಡಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುವುದು;

(ii) ಸಂದರ್ಶಕರ ಮತ್ತು ಸಹ-ಸಂದರ್ಶಕರಿಬ್ಬರ ಗೈರುಹಾಜರಿಯಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಘಟಿಕೋತ್ಸವಗಳಲ್ಲಿ ಅಧ್ಯಕ್ಷತೆಯನ್ನು ವಹಿಸುವುದು;

(iii) ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವುದು;

(iv) ಈ ಅಧಿನಿಯಮ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಅನುಸಾರವಾಗಿ ಕುಲಪತಿಗಳನ್ನು ನೇಮಿಸುವುದು ಅಥವಾ ಪುನರ್ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(v) ಈ ಅಧಿನಿಯಮದ 16ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ನಾಮನಿರ್ದೇಶಕ ಸಮಿತಿಯ ಸದಸ್ಯರಾಗಿ ಒಬ್ಬ ವ್ಯಕ್ತಿಯನ್ನು ನಾಮನಿರ್ದೇಶನ ಮಾಡುವುದು;

(vi) ಸಹಕುಲಪತಿಗಳ, ಡೀನ್‌ರವರ, ಕುಲಸಚಿವರ ಹಾಗೂ ಹಣಕಾಸು ಅಧಿಕಾರಿಗಳ ನೇಮಕಾತಿಯನ್ನು ಪೂರ್ವಾನುಮೋದಿಸುವುದು;

(vii) ಪ್ರಬಂಧಕ ಮಂಡಳಿಯ ಸದಸ್ಯರನ್ನಾಗಿ ಇಬ್ಬರು ಶಿಕ್ಷಣ ತಜ್ಞರನ್ನು ನಾಮನಿರ್ದೇಶಿಸುವುದು;

(viii) ಮೊದಲ ಸಹ-ಕುಲಪತಿಗಳು ಮತ್ತು ಹಣಕಾಸು ಅಧಿಕಾರಿಗಳನ್ನು ನೇಮಿಸುವುದು;

(ix) ಮೊದಲ ಕಾರ್ಯನಿರ್ವಾಹಣಾ ಪರಿಷತ್ತು, ಹಣಕಾಸು ಸಮಿತಿ, ಸಂಶೋಧನಾ ಪರಿಷತ್ತು ಹಾಗೂ ಶೈಕ್ಷಣಿಕ ಪರಿಷತ್ತುಗಳನ್ನು ರಚಿಸುವುದು;

(x) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ ಕಾರ್ಯಸೂಚಿ ವಿಷಯಗಳನ್ನು ಪೂರ್ವಾನುಮೋದಿಸುವುದು;

(xi) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ (ಪ್ರಬಂಧಕ ಮಂಡಳಿಯ ಸಭೆಯಲ್ಲಿ ಉಂಟಾದ ವಿವಾದಗಳನ್ನು ಹೊರತುಪಡಿಸಿ) ವಿವಾದಗಳನ್ನು ಪರಿಹರಿಸುವುದು.

(6) ಪದಾಧಿಕಾರಿ ಅಥವಾ ಸಂಸ್ಥೆ ಮತ್ತು ವಿಶ್ವವಿದ್ಯಾಲಯದ ಯಾವುದೇ ಇತರ ಪದಾಧಿಕಾರಿ ಅಥವಾ ಸಂಸ್ಥೆಗಳ ನಡುವೆ ವಿವಾದಗಳು ಉಂಟಾದಲ್ಲಿ, ಆ ವಿವಾದವನ್ನು ಕುಲಾಧಿಪತಿಯವರ ಪರ್ಯಾಲೋಚನೆಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿವಾದದ ಸಂದರ್ಭದಲ್ಲಿ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**16. ಕುಲಪತಿಗಳು.-** (1) (2)ನೇ ಉಪಪ್ರಕರಣದ ಉಪಬಂಧಗಳಿಗೆ ಅನುಸಾರವಾಗಿ ನಾಮನಿರ್ದೇಶಕ ಸಮಿತಿಯು ಶಿಫಾರಸ್ಸು ಮಾಡಿದ ಮೂವರು ವ್ಯಕ್ತಿಗಳ ಪೈಕಿಯಿಂದ ಒಬ್ಬರನ್ನು ಮೂರು ವರ್ಷಗಳ ಅವಧಿಗಾಗಿ ಕುಲಪತಿಗಳನ್ನಾಗಿ, ಪರಿನಿಯಮಗಳಲ್ಲಿ ನಿಯಮಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರು ನೇಮಿಸತಕ್ಕದ್ದು. ಮೂರು ವರ್ಷಗಳ ಅವಧಿಯು ಮುಗಿದ ತರುವಾಯ, ಇದನ್ನು ಮೂರು ವರ್ಷಗಳ ಮತ್ತೊಂದು ಅವಧಿಗೆ ನವೀಕರಿಸಬಹುದು:

ಪರಂತು, ಕುಲಪತಿಯವರು, ತಮ್ಮ ಅವಧಿ ಮುಗಿದ ನಂತರವೂ ಹೊಸ ಕುಲಪತಿಯವರು ಸೇರಿಕೊಳ್ಳುವವರೆಗೆ ಪದದಲ್ಲಿ ಮುಂದುವರೆಯತಕ್ಕದ್ದು. ಆದಾಗ್ಯೂ ಈ ಅವಧಿಯು ಯಾವುದೇ ಸಂದರ್ಭದಲ್ಲಿ ಒಂದು ವರ್ಷವನ್ನು ಮೀರತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಹೇಳಿರುವ ನಾಮನಿರ್ದೇಶಕ ಸಮಿತಿಯಲ್ಲಿ ಈ ಮುಂದಿನ ವ್ಯಕ್ತಿಗಳು ಇರತಕ್ಕದ್ದು, ಎಂದರೆ:-

(i) ಕುಲಾಧಿಪತಿಯವರು ನಾಮನಿರ್ದೇಶಿಸಿದ ಒಬ್ಬ ವ್ಯಕ್ತಿ;

(ii) ಪ್ರಬಂಧಕ ಮಂಡಳಿಯ ಇಬ್ಬರು ನಾಮ ನಿರ್ದೇಶಿತರು, ಇವರಲ್ಲಿ ಒಬ್ಬರನ್ನು ಪ್ರಬಂಧಕ ಮಂಡಳಿಯು ಸಮಿತಿಯ ಸಂಚಾಲಕರೆಂದು ನಾಮನಿರ್ದೇಶಿಸತಕ್ಕದ್ದು.

(3) ಶೋಧನಾ ಸಮಿತಿಯು, ಅರ್ಹತೆಯ ಆಧಾರದ ಮೇಲೆ ಕುಲಪತಿಯ ಹುದ್ದೆಗೆ ಸೂಕ್ತವಾದ ಮೂವರು ವ್ಯಕ್ತಿಗಳ ಹೆಸರನ್ನು ಶಿಫಾರಸ್ಸು ಮಾಡತಕ್ಕದ್ದು ಮತ್ತು ಅದನ್ನು ಪ್ರತಿಯೊಬ್ಬ ವ್ಯಕ್ತಿಯ ವಿದ್ಯಾರ್ಹತೆ ಮತ್ತಿತರ ವಿಶಿಷ್ಟ ಪ್ರಶಸ್ತಿಗಳನ್ನು ತಿಳಿಸುವ ಒಂದು ಸಂಕ್ಷಿಪ್ತ ವರದಿಯೊಂದಿಗೆ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು.

(4) ಕುಲಪತಿಯವರು ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಹಣಾ ಮತ್ತು ಶೈಕ್ಷಣಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣವನ್ನು ಚಲಾಯಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯದ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೊಳಿಸತಕ್ಕದ್ದು:

ಪರಂತು, ಶಿಕ್ಷಕರ ನೇಮಕಾತಿಯನ್ನು ಹೊರತುಪಡಿಸಿ, ಕೂಡಲೇ ಕ್ರಮವನ್ನು ಕೈಗೊಳ್ಳಬೇಕಾದ ತುರ್ತು ಸ್ವರೂಪದ ಯಾವುದೇ ಇತರ ವಿಷಯಗಳಲ್ಲಿ ಮತ್ತು ಅದನ್ನು ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ವಿಶ್ವವಿದ್ಯಾಲಯವು ಇದಕ್ಕಾಗಿ ಅಧಿಕೃತಗೊಳಿಸಿದ್ದ ಯಾವೊಬ್ಬ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ಇತರ ಸಂಸ್ಥೆಯು ಕೂಡಲೇ ಕ್ರಮಕೈಗೊಳ್ಳುವುದು ಸಾಧ್ಯವಿರದಿರುವಾಗ ಕುಲಪತಿಯವರು, ತಾನು ಸೂಕ್ತವೆಂದು ಭಾವಿಸಬಹುದಾದಂತಹ ಕ್ರಮವನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆದು ಕೈಗೊಳ್ಳತಕ್ಕದ್ದು.

(5) ಕುಲಪತಿಯವರು ಪರಿನಿಯಮಗಳು ಅಥವಾ ನಿಯಮಗಳಲ್ಲಿ ಹೇಳಲಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು:

ಪರಂತು, ಕುಲಪತಿಗಳ ಅಭಿಪ್ರಾಯದಲ್ಲಿ, ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಯಾವುದೇ ನಿರ್ಣಯವು, ಈ ಅಧಿನಿಯಮ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳು, ವಿನಿಯಮಗಳು ಅಥವಾ ನಿಯಮಗಳ ಮೂಲಕ ಪ್ರದತ್ತವಾದ ಅಧಿಕಾರದ ಹೊರಗಿದ್ದರೆ ಅಥವಾ ವಿಶ್ವವಿದ್ಯಾಲಯದ ಹಿತಾಸಕ್ತಿಗೆ ಪ್ರತಿಕೂಲವಾಗಬಹುದಾಗಿದ್ದರೆ, ಅದರ ನಿರ್ಣಯದ ದಿನಾಂಕದಿಂದ ಹದಿನೈದು ದಿನಗಳ ಒಳಗೆ ತನ್ನ ನಿರ್ಣಯವನ್ನು ಪರಿಷ್ಕರಿಸಲು ಸಂಬಂಧಪಟ್ಟ ಪ್ರಾಧಿಕಾರವನ್ನು ಆತನು ಕೋರತಕ್ಕದ್ದು ಮತ್ತು ಪ್ರಾಧಿಕಾರವು ಅಂಥ ನಿರ್ಣಯವನ್ನು ಸಂಪೂರ್ಣವಾಗಿ ಅಥವಾ ಭಾಗಶಃವಾಗಿ ಪರಿಷ್ಕರಿಸಲು ನಿರಾಕರಿಸಿದ ಸಂದರ್ಭದಲ್ಲಿ ಅಥವಾ ಹದಿನೈದು ದಿನಗಳೊಳಗೆ ಯಾವುದೇ ನಿರ್ಣಯವನ್ನು ತೆಗೆದುಕೊಳ್ಳಲು ವಿಫಲವಾದಲ್ಲಿ, ನಂತರ ಅಂಥ ವಿಷಯವನ್ನು ಕುಲಾಧಿಪತಿಗಳಿಗೆ ಕಳುಹಿಸತಕ್ಕದ್ದು ಮತ್ತು ಈ ಬಗ್ಗೆ ಇವರ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

(6) ಕುಲಪತಿಯವರ ಸೇವೆಗಳನ್ನು, ಪ್ರಬಂಧಕ ಮಂಡಳಿಯ ಅನುಮೋದನೆಯೊಂದಿಗೆ ಮತ್ತು ಸಹಜ ನ್ಯಾಯದ ತತ್ವಗಳನ್ನು ಅನುಸರಿಸಿದ ನಂತರ ಹಾಗೂ ಶಿಸ್ತಿನ ಆಧಾರದ ಮೇಲೆ ಅಂತ್ಯಗೊಳಿಸುವ ಸಂದರ್ಭವೂ ಸೇರಿದಂತೆ, ಪ್ರಕರಣದ ಬಗ್ಗೆ ಕುಲಪತಿಯು ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡಿದ ತರುವಾಯ, ಕುಲಾಧಿಪತಿಯವರು ಅಂತ್ಯಗೊಳಿಸಬಹುದು.

(7) ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಸಂದರ್ಶಕರು, ಸಹ-ಸಂದರ್ಶಕರು ಕುಲಾಧಿಪತಿಯವರು ಮತ್ತು ಸಹ-ಕುಲಾಧಿಪತಿಯವರು ಇವರುಗಳ ಗೈರು ಹಾಜರಿಯ ಸಂದರ್ಭದಲ್ಲಿ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**17. ಸಹ-ಕುಲಪತಿಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಮೂರು ಜನರನ್ನು ಮೀರದಂತೆ ಸಹ-ಕುಲಪತಿಗಳನ್ನು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**18. ವ್ಯಾಸಂಗ ವಿಭಾಗಗಳ ಡೀನ್‌ಗಳು.–** ಕುಲಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವ್ಯಾಸಂಗ ವಿಭಾಗಗಳ ಡೀನ್‌ಗಳನ್ನು ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**19. ಕುಲಸಚಿವರು.–** (1) ಕುಲಾಧಿಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಸಚಿವರನ್ನು ನೇಮಕ ಮಾಡತಕ್ಕದ್ದು.

(2) ಪರಿನಿಯಮಗಳಲ್ಲಿ ಪರಿಭಾಷಿಸಿರುವಂಥ ಎಲ್ಲಾ ಕರಾರುಗಳನ್ನು ವಿಶ್ವವಿದ್ಯಾಲಯದ ಪರವಾಗಿ ಕುಲಸಚಿವರು ಮಾಡಿಕೊಳ್ಳತಕ್ಕದ್ದು ಮತ್ತು ಅದಕ್ಕೆ ಸಹಿ ಹಾಕತಕ್ಕದ್ದು.

(3) ಕುಲಸಚಿವರು ವಿಶ್ವವಿದ್ಯಾಲಯದ ಪರವಾಗಿ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಪರಿನಿಯಮಗಳಿಂದ ಪ್ರದತ್ತಗೊಳಿಸಬಹುದಾದಂಥ ಅಥವಾ ಕುಲಾಧಿಪತಿಯವರು ಮತ್ತು ಕುಲಪತಿಯವರು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು ವಿಶ್ವವಿದ್ಯಾಲಯದ ದಾಖಲೆಗಳು ಮತ್ತು ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು, ಕುಲಪತಿಯವರು ಅಥವಾ ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಅಂಥ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿತಕ್ಕದ್ದು.

**20. ಹಣಕಾಸು ಅಧಿಕಾರಿ.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು, ಪರಿನಿಯಮಗಳ ಮೂಲಕ ಪ್ರದತ್ತಗೊಳಿಸಬಹುದಾದ ಅಂಥ ವಿಧಾನದಲ್ಲಿ ಹಣಕಾಸು ಅಧಿಕಾರಿಯನ್ನು ನೇಮಕ ಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**21. ಇತರ ಅಧಿಕಾರಿಗಳು.–** ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ ನೇಮಕಾತಿಯ ವಿಧಾನ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಕರ್ತವ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ – IV

## ವಿಶ್ವವಿದ್ಯಾಲಯದ ಪ್ರಾಧಿಕಾರಗಳು

**22. ವಿಶ್ವವಿದ್ಯಾಲಯದ ಪ್ರಾಧಿಕಾರಗಳು.–** ಈ ಮುಂದಿನವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:–

(i) ಪ್ರಬಂಧಕ ಮಂಡಳಿ;

(ii) ವ್ಯವಸ್ಥಾಪನಾ ಮಂಡಳಿ;

(iii) ಶೈಕ್ಷಣಿಕ ಪರಿಷತ್ತು;

(iv) ಸಂಶೋಧನಾ ಪರಿಷತ್ತು;

(v) ಹಣಕಾಸು ಪರಿಷತ್ತು; ಮತ್ತು

(vi) ವಿಶ್ವವಿದ್ಯಾಲಯದ ಪ್ರಾಧಿಕಾರಗಳೆಂದು ಪರಿನಿಯಮಗಳ ಮೂಲಕ ಘೋಷಿಸಬಹುದಾದ ಅಂಥ ಇತರ ಪ್ರಾಧಿಕಾರಗಳು.

**23. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು.–** (1) ಪ್ರಬಂಧಕ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು – ಅಧ್ಯಕ್ಷರು;

(ii) ಕುಲಪತಿಯವರು – ಸದಸ್ಯರು;

(iii) ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(iv) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(v) ರಾಜ್ಯ ಸರ್ಕಾರವು ನಾಮ ನಿರ್ದೇಶನ ಮಾಡಿದ ಆಡಳಿತವನ್ನು ಒಳಗೊಂಡಂತೆ ವ್ಯವಸ್ಥಾಪನೆ, ಹಣಕಾಸು ಅಥವಾ ಯಾವುದೇ ಇತರ ವಿಶೇಷ ಕ್ಷೇತ್ರದಲ್ಲಿನ ಒಬ್ಬರು ತಜ್ಞರು;

(vi) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಇಬ್ಬರು ವ್ಯಕ್ತಿಗಳು ಅವರ ಪೈಕಿ ಒಬ್ಬರು ಮಹಿಳೆಯಾಗಿರತಕ್ಕದ್ದು;

(vii) ಸಹ ಕುಲಪತಿಯವರು ಮತದಾನದ ಹಕ್ಕಿಲ್ಲದ ಸದಸ್ಯರಾಗಿರತಕ್ಕದ್ದು;

(viii) ವಿಶ್ವವಿದ್ಯಾಲಯ ಅನುದಾನ ಆಯೋಗದ ನಾಮನಿರ್ದೇಶಿತ ಒಬ್ಬ ಸುಪ್ರಸಿದ್ಧ ಶಿಕ್ಷಣ ತಜ್ಞರು.

(2) ಕುಲಸಚಿವರು ಪ್ರಬಂಧಕ ಮಂಡಳಿಯ ಮತದಾನದ ಹಕ್ಕಿರದ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ಪ್ರಬಂಧಕ ಮಂಡಳಿಯ ಸದಸ್ಯರ ಪದಾವಧಿ, ಸರ್ಕಾರದಿಂದ ನಾಮನಿರ್ದೇಶಿತರಾದ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ನೇಮಕಾತಿ, ನವೀಕರಣ ಮತ್ತು ತೆಗೆದುಹಾಕುವುದು ಮುಂತಾದವುಗಳು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಾಧಿಪತಿಯವರು ಯಾವಾಗಲೂ ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರ ಗೈರುಹಾಜರಿಯಲ್ಲಿ ಕುಲಾಧಿಪತಿಯವರಿಂದ ನಾಮನಿರ್ದೇಶಿತರಾದ ಯಾರಾದರೂ ಒಬ್ಬರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು. ಅಂಥ ಸಭೆಯ ಅಧ್ಯಕ್ಷತೆಯನ್ನು ವಹಿಸುವುದಕ್ಕೆ ಕುಲಾಧಿಪತಿಯವರು ಯಾವೊಬ್ಬ ವ್ಯಕ್ತಿಯನ್ನೂ ನಾಮನಿರ್ದೇಶನ ಮಾಡಿರದಿದ್ದಲ್ಲಿ, ಸಭೆಯಲ್ಲಿ ಹಾಜರಿರುವ ಸದಸ್ಯರು ಸರಳ ಬಹುಮತದ ಮೂಲಕ ಅವರುಗಳ ಪೈಕಿಯಿಂದಲೇ ಆ ಸಭೆಯ ಅಧ್ಯಕ್ಷನನ್ನು ಚುನಾಯಿಸತಕ್ಕದ್ದು.

(5) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಿಗೆ, ಅಂಥ ಸಭೆಯಲ್ಲಿ ಹಾಜರಿದ್ದು ಮತ ನೀಡುವ ಮೂರು ಜನ ಸದಸ್ಯರು ಗಣಪೂರ್ತಿ (ಕೋರಂ) ಆಗಿರತಕ್ಕದ್ದು:

ಪರಂತು, ಪ್ರಬಂಧಕ ಮಂಡಳಿಯ ಯಾವುದೇ ಸಭೆಯ ಕೋರಂ ಪೂರ್ಣವಾಗಬೇಕಾದರೆ ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಿರುವುದು ಮತ್ತು ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಾಗದೇ ಇದ್ದಾಗ ಕುಲಪತಿಯವರು ಹಾಜರಿರುವುದು ಯಾವಾಗಲೂ ಅವಶ್ಯವಾಗಿರತಕ್ಕದ್ದು.

(6) ಪ್ರಬಂಧಕ ಮಂಡಳಿಯು ವಿಶ್ವವಿದ್ಯಾಲಯದ ಪ್ರಧಾನ ಪ್ರಬಂಧಕ ಸಂಸ್ಥೆಯಾಗಿರತಕ್ಕದ್ದು ಮತ್ತು ಅದು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಕಗೊಳಿಸುವುದು;

(ii) ವಿಶ್ವವಿದ್ಯಾಲಯವು ಅನುಸರಿಸಬೇಕಾದ ಕಾರ್ಯನೀತಿಗಳನ್ನು ರಚಿಸುವುದು;

(iii) ಈ ಅಧಿನಿಯಮದ ಅಥವಾ ಪರಿನಿಯಮಗಳ ಅಥವಾ ನಿಯಮಗಳ ಉಪಬಂಧಗಳಿಗೆ ಅನುಗುಣವಾಗಿ ಇರದ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ತೀರ್ಮಾನಗಳನ್ನು ಪುನರೀಕ್ಷಿಸುವುದು;

(iv) ವಿಶ್ವವಿದ್ಯಾಲಯದ ಆಯವ್ಯಯ ಮತ್ತು ವಾರ್ಷಿಕ ವರದಿಗಳನ್ನು ಅನುಮೋದಿಸುವುದು;

(v) ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸುವುದು ಅಥವಾ ಈಗಾಗಲೇ ಇರುವ ಪರಿನಿಯಮಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವುದು ಅಥವಾ ನಿರಸನಗೊಳಿಸುವುದು;

(vi) ವಿಶ್ವವಿದ್ಯಾಲಯವನ್ನು ಸ್ವಯಂಸಮಾಪನಗೊಳಿಸುವ ನಿರ್ಧಾರವನ್ನು ತೆಗೆದುಕೊಳ್ಳುವುದು;

(vii) ಸರ್ಕಾರಕ್ಕೆ ಸಲ್ಲಿಸುವ ಪ್ರಸ್ತಾವಗಳನ್ನು ಅನುಮೋದಿಸುವುದು;

(viii) ಶುಲ್ಕ ನಿಯಂತ್ರಣಾ ಸಮಿತಿಗೆ ಮೂವರು ಸದಸ್ಯರನ್ನು ನಾಮನಿರ್ದೇಶನ ಮಾಡುವುದು;

(ix) ವಿಶ್ವವಿದ್ಯಾಲಯದ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕೆ ಅಪೇಕ್ಷಣೀಯವೆಂದು ಕಂಡುಬರುವಂಥ ತೀರ್ಮಾನಗಳನ್ನು ಮತ್ತು ಕ್ರಮಗಳನ್ನು ಕೈಗೊಳ್ಳುವುದು.

(7) ಪ್ರಬಂಧಕ ಮಂಡಳಿಯು ಒಂದು ವರ್ಷದಲ್ಲಿ ಕನಿಷ್ಠ ಮೂರು ಸಲ ಸಭೆ ಸೇರತಕ್ಕದ್ದು.

(8) ಪ್ರಬಂಧಕ ಮಂಡಳಿಯು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಸಮಯ ಮತ್ತು ಸ್ಥಳದಲ್ಲಿ ಸಭೆ ಸೇರತಕ್ಕದ್ದು.

**24. ವ್ಯವಸ್ಥಾಪನಾ ಮಂಡಳಿ.**– (1) ವ್ಯವಸ್ಥಾಪನಾ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಗಳು;

(ii) ಸಹ–ಕುಲಪತಿಗಳು;

(iii) ಕುಲಸಚಿವರು;

(iv) ಪ್ರಾಯೋಜಕ ಸಂಸ್ಥೆಯ ಇಬ್ಬರು ನಾಮನಿರ್ದೇಶಿತರು;

(v) ಕುಲಪತಿಗಳು ನಾಮನಿರ್ದೇಶಿಸಬಹುದಾದ ವಿದ್ಯಾಲಯಗಳ ಇಬ್ಬರು ಡೀನ್‌ಗಳು;

(2) ಕುಲಪತಿಯವರು ವ್ಯವಸ್ಥಾಪನಾ ಮಂಡಳಿಯ ಅಧ್ಯಕ್ಷರಾಗಿರತಕ್ಕದ್ದು ಮತ್ತು ಕುಲಸಚಿವರು ವ್ಯವಸ್ಥಾಪನಾ ಮಂಡಳಿಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ವ್ಯವಸ್ಥಾಪನಾ ಮಂಡಳಿಯು ವಿಶ್ವವಿದ್ಯಾಲಯದ ಕಾರ್ಯನಿರ್ವಹಣಾ ಮಂಡಳಿಯಾಗಿರತಕ್ಕದ್ದು. ವ್ಯವಸ್ಥಾಪನಾ ಮಂಡಳಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ವ್ಯವಸ್ಥಾಪನಾ ಮಂಡಳಿಯ ಎಲ್ಲಾ ಸಭೆಗಳಲ್ಲಿ ಯಾವಾಗಲೂ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು ಹಾಗೂ ಕುಲಪತಿಯವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೇ ಇದ್ದ ಸಂದರ್ಭದಲ್ಲಿ ಸಭೆಯಲ್ಲಿ ಹಾಜರಿರುವ ಸದಸ್ಯರು ಚುನಾಯಿಸಿದ ಯಾವೊಬ್ಬ ಇತರ ಸದಸ್ಯರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ವ್ಯವಸ್ಥಾಪನಾ ಮಂಡಳಿಯ ಸಭೆಯಲ್ಲಿ ಯಾವುದೇ ವಿಷಯವನ್ನು ಕುರಿತು ವಿವಾದ ಉಂಟಾದಲ್ಲಿ ಸದರಿ ವಿಷಯವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯದ ಬಗ್ಗೆ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**25. ಶೈಕ್ಷಣಿಕ ಪರಿಷತ್ತು.**–(1) ಶೈಕ್ಷಣಿಕ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹ–ಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಕಾರ್ಯದರ್ಶಿಗಳು

(iv) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಶೈಕ್ಷಣಿಕ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಶೈಕ್ಷಣಿಕ ಸಂಸ್ಥೆಯಾಗಿರತಕ್ಕದ್ದು ಮತ್ತು ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಹಾಗೂ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**26. ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು.**– (1) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಸಂಶೋಧನಾ ಮತ್ತು ಅನ್ವೇಷಣಾ ಸಮಿತಿಯಾಗಿರತಕ್ಕದ್ದು ಹಾಗೂ ಸಂಶೋಧನಾ ಕ್ಷೇತ್ರದ ಆದ್ಯತೆಯೂ ಒಳಗೊಂಡಂತೆ, ವಿಶ್ವವಿದ್ಯಾಲಯವು ಕೈಗೊಳ್ಳಬೇಕಾದ ಸಂಶೋಧನೆ ಮತ್ತು ಅನ್ವೇಷಣೆಯ ಬಗ್ಗೆ ಒಂದು ವ್ಯಾಪಕವಾದ ಪರಿಪೂರ್ಣ ಭವಿಷ್ಯದ್ ದೃಷ್ಟಿಯನ್ನು ಒದಗಿಸತಕ್ಕದ್ದು. ಈ ಪರಿಷತ್ತು, ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಮತ್ತು ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಸಂಶೋಧನಾ ಮತ್ತು ಅನ್ವೇಷಣಾ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹ–ಕುಲಪತಿಯವರು – ಸದಸ್ಯರು

(iii) ಸಂಶೋಧನೆಯ ಡೀನ್ ಇವರು – ಕಾರ್ಯದರ್ಶಿ

(iv) ಅನ್ವೇಷಣಾ ವಿಭಾಗದ ಮುಖ್ಯಸ್ಥರು – ಸದಸ್ಯರು

(v) ಎಲ್ಲಾ ವ್ಯಾಸಂಗ ವಿಭಾಗಗಳ ಡೀನ್‌ಗಳು – ಸದಸ್ಯರು ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

**27. ಹಣಕಾಸು ಸಮಿತಿ.–** (1) ಹಣಕಾಸು ಸಮಿತಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು ಅಥವಾ ಅವರ ನಾಮನಿರ್ದೇಶಿತರು – ಅಧ್ಯಕ್ಷರು

(ii) ಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಸದಸ್ಯರು

(iv) ಹಣಕಾಸು ಅಧಿಕಾರಿ – ಕಾರ್ಯದರ್ಶಿ

(v) ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು – ಸದಸ್ಯರು; ಮತ್ತು

(vi) ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಹಣಕಾಸು ಸಮಿತಿಯು ಹಣಕಾಸಿನ ವಿಷಯಗಳನ್ನು ಕೈಗೊಳ್ಳುವ ವಿಶ್ವವಿದ್ಯಾಲಯದ ಪ್ರಧಾನ ಹಣಕಾಸು ಸಂಸ್ಥೆಯಾಗಿರತಕ್ಕದ್ದು ಹಾಗೂ ಅದು ಈ ಅಧಿನಿಯಮದ, ನಿಯಮಗಳ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಹಣಕಾಸು ವಿಷಯಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**28. ಇತರ ಪ್ರಾಧಿಕಾರಗಳು.–** ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ರಚನೆ, ಅಧಿಕಾರಗಳು ಹಾಗೂ ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

**29. ಒಂದು ಪ್ರಾಧಿಕಾರದ ಅಥವಾ ಸಂಸ್ಥೆಯ ಸದಸ್ಯತ್ವಕ್ಕೆ ಅನರ್ಹತೆ.–** ವಿಶ್ವವಿದ್ಯಾಲಯದ ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಒಬ್ಬ ವ್ಯಕ್ತಿಯು,–

(ಎ) ಅಸ್ವಸ್ಥ ಚಿತ್ತನಾಗಿದ್ದು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿಸಲ್ಪಟ್ಟಿದ್ದರೆ;

(ಬಿ) ಅವಿಮುಕ್ತ ದಿವಾಳಿಯಾಗಿದ್ದರೆ;

(ಸಿ) ನೈತಿಕ ಅಧಃಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದರೆ;

(ಡಿ) ಖಾಸಗಿ ಬೋಧನಾ ತರಗತಿಗಳನ್ನು ನಡೆಸುತ್ತಿದ್ದರೆ ಅಥವಾ ಸ್ವತಃ ನಿರತನಾಗಿದ್ದರೆ;

(ಇ) ಯಾವುದೇ ವಿಧದಲ್ಲಿ, ಎಲ್ಲಿಯೇಯಾಗಲೀ ಯಾವುದೇ ಪರೀಕ್ಷೆಯನ್ನು ನಡೆಸುವಲ್ಲಿ ಅನುಚಿತ ಅಭ್ಯಾಸದಲ್ಲಿ ತೊಡಗಿದ್ದಕ್ಕಾಗಿ ಅಥವಾ ಉತ್ತೇಜಿಸಿದ್ದಕ್ಕಾಗಿ ದಂಡಿತನಾಗಿದ್ದರೆ;

(ಎಫ್) ಪ್ರಾಯೋಜಿತ ಸಂಸ್ಥೆಯು ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಯಾವೊಬ್ಬ ಸದಸ್ಯನು ಆ ಪದವನ್ನು ಹೊಂದಿರುವುದಕ್ಕೆ ಅರ್ಹನಲ್ಲನೆಂದು ಲಿಖಿತದಲ್ಲಿ ಅಭಿಪ್ರಾಯ ನೀಡಿದಾಗಲೆಲ್ಲಾ,

–ಸದಸ್ಯನಾಗಿರುವುದಕ್ಕೆ ಅನರ್ಹನಾಗತಕ್ಕದ್ದು.

**30. ಖಾಲಿಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಕಾರ್ಯ ಅಥವಾ ವ್ಯವಹರಣೆಗಳು ಕೇವಲ ಅದರಲ್ಲಿ ಯಾವುದೇ ಖಾಲಿಸ್ಥಾನ ಇದೆ ಎಂಬ ಕಾರಣದಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣದಿಂದ ಮಾತ್ರವೇ ಅಸಿಂಧುವಾಗತಕ್ಕದ್ದಲ್ಲ.

**31. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು.–** (1) ಯಾವುವೇ ಕಾರ್ಯಸೂಚಿ ವಿಷಯಗಳನ್ನು ಕುಲಾಧಿಪತಿಯವರ ಪೂರ್ವಾನುಮೋದನೆಯನ್ನು ಪಡೆಯದೇ ಪ್ರಬಂಧಕ ಮಂಡಳಿಯ ಅಥವಾ ಕಾರ್ಯನಿರ್ವಹಣಾ ಪರಿಷತ್ತಿನ ಅಥವಾ ಯಾವುದೇ ಸಮಿತಿಯ ಸಭೆಗಳ ಕಾರ್ಯಸೂಚಿ ವಿಷಯಗಳಲ್ಲಿ ಸೇರಿಸತಕ್ಕದ್ದಲ್ಲ ಅಥವಾ ಚರ್ಚೆಗೆ ತೆಗೆದುಕೊಳ್ಳತಕ್ಕದ್ದಲ್ಲ ಅಥವಾ ತೀರ್ಮಾನಿಸತಕ್ಕದ್ದಲ್ಲ.

(2) ಈ ಅಧಿನಿಯಮದ ಯಾವುದೇ ಉಪಬಂಧಗಳನ್ನು ಪಾಲಿಸದೆ ಇರುವ ಸಂದರ್ಭದಲ್ಲಿ, ಕುಲಾಧಿಪತಿಯವರು ವಿಶ್ವವಿದ್ಯಾಲಯದ ಯಾವುದೇ ಪದಾಧಿಕಾರಿ ಅಥವಾ ಸಂಸ್ಥೆಯು ತೆಗೆದುಕೊಂಡ ಎಲ್ಲಾ ತೀರ್ಮಾನಗಳನ್ನು ವಿಪರ್ಯಯಗೊಳಿಸುವ ಮೂಲಕ ಪರಿಹಾರ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಅಧಿಕಾರವನ್ನು ಎಲ್ಲಾ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಅಂಥ ಪರಿಹಾರ ಕ್ರಮದ ಪರಿಣಾಮವಾಗಿ, ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ವಿಶ್ವವಿದ್ಯಾಲಯದ ಪದಾಧಿಕಾರಿ ಅಥವಾ ಸಂಸ್ಥೆಯು ಕೈಗೊಂಡಿದ್ದ ಎಲ್ಲಾ ಅಂಥ ಕ್ರಮಗಳು, ಮೊದಲಿನಿಂದಲೂ ಶೂನ್ಯ ಮತ್ತು ಅಕೃತ ಎಂದು ಭಾವಿಸತಕ್ಕದ್ದು ಹಾಗೂ ತತ್ಪರಿಣಾಮವಾಗಿ, ಉಪಬಂಧ ಪಾಲಿಸದೇ ಇದ್ದ ವಿಷಯ ಅಥವಾ ನಿರ್ಧಾರದ ಸಂಬಂಧದಲ್ಲಿ ಅದಕ್ಕೆ ಮೊದಲು ಇದ್ದ ವಸ್ತುಸ್ಥಿತಿಯೇ ಮುಂದುವರಿಯತಕ್ಕದ್ದು.

## ಅಧ್ಯಾಯ – V

## ಪರಿನಿಯಮಗಳು ಮತ್ತು ವಿನಿಯಮಗಳು

**32. ಪರಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಪರಿನಿಯಮಗಳು, ವಿಶ್ವವಿದ್ಯಾಲಯಕ್ಕೆ ಮತ್ತು ಸಿಬ್ಬಂದಿಗೆ ಸಂಬಂಧಿಸಿದ ಎಲ್ಲಾ ಅಥವಾ ಯಾವುದೇ ವಿಷಯಕ್ಕೆ ಈ ಕೆಳಗಿನಂತೆ ಉಪಬಂಧ ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಕಾರ್ಯಕಲಾಪಗಳನ್ನು ನಡೆಸುವ ಮತ್ತು ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಲಾಗಿರುವ ಸಂಸ್ಥೆಗಳ ರಚನೆಯ ಕಾರ್ಯವಿಧಾನ;

(ii) ಶಾಶ್ವತ ಶಾಸನಬದ್ಧ ದತ್ತಿ ನಿಧಿ, ವಿಶ್ವವಿದ್ಯಾಲಯ ದತ್ತಿ ನಿಧಿ, ಸಾಮಾನ್ಯ ನಿಧಿ ಹಾಗೂ ಅಭಿವೃದ್ಧಿ ನಿಧಿಗಳ ನಿರ್ವಹಣೆ;

(iii) ಕುಲಪತಿಗಳು, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರ ನೇಮಕಾತಿಯ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಪ್ರಕಾರ್ಯಗಳು;

(iv) ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ, ಅಧ್ಯಾಪಕರ ಮತ್ತು ನೌಕರರ ನೇಮಕಾತಿ ವಿಧಾನ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(v) ವಿಶ್ವವಿದ್ಯಾಲಯ ಹಾಗೂ ಅದರ ಅಧಿಕಾರಿಗಳು, ವ್ಯಾಸಂಗ ವಿಭಾಗದ (ಫ್ಯಾಕಲ್ಟಿ) ಸದಸ್ಯರು, ನೌಕರರು ಹಾಗೂ ವಿದ್ಯಾರ್ಥಿಗಳ ನಡುವೆ ಉಂಟಾದ ವಿವಾದಗಳನ್ನು ಪರಿಹರಿಸುವ ಕಾರ್ಯವಿಧಾನ;

(vi) ವಿಭಾಗಗಳು ಮತ್ತು ವ್ಯಾಸಂಗ ವಿಭಾಗಗಳ (ಫ್ಯಾಕಲ್ಟಿಗಳ) ಸೃಜನೆ, ರದ್ಧತಿ ಅಥವಾ ಪುನಾರಚನೆ;

(vii) ಇತರ ವಿಶ್ವವಿದ್ಯಾಲಯಗಳು ಅಥವಾ ಉನ್ನತ ಕಲಿಕಾ ಸಂಸ್ಥೆಗಳ ಜೊತೆಯಲ್ಲಿ ಸಹಕರಿಸಬೇಕಾದ ರೀತಿ;

(viii) ಗೌರವ ಪದವಿಗಳ ನೀಡಿಕೆಯ ಕಾರ್ಯವಿಧಾನ;

(ix) ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿವೇತನ ಮಂಜೂರಾತಿಗೆ ಸಂಬಂಧಿಸಿದ ಉಪಬಂಧಗಳು;

(x) ವಿವಿಧ ವ್ಯಾಸಂಗ ಕ್ರಮಗಳಲ್ಲಿನ ಸೀಟುಗಳ ಸಂಖ್ಯೆಗೆ ಸಂಬಂಧಿಸಿದ ಕಾರ್ಯನೀತಿಗಳು ಮತ್ತು ಅಂಥ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಕಾರ್ಯವಿಧಾನ;

(xi) ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಶುಲ್ಕಕ್ಕೆ ಸಂಬಂಧಿಸಿದ ಕಾರ್ಯನೀತಿ;

(xii) ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಉಚಿತ ಶಿಕ್ಷಣ (ಫ್ರೀಶಿಪ್), ಪದಕಗಳು ಹಾಗೂ ಬಹುಮಾನಗಳನ್ನು ಪ್ರಾರಂಭಿಸುವುದು;

(xiii) ಪ್ರಬಂಧಕ ಮಂಡಳಿಯು ನಿರ್ಧರಿಸಬಹುದಾದ ಅಥವಾ ಈ ಅಧಿನಿಯಮದ ಅಡಿಯಲ್ಲಿ ಪರಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬೇಕಾದ ಅಗತ್ಯತೆಯುಳ್ಳ ಯಾವುದೇ ಇತರ ವಿಷಯಗಳು.

**33. ಪರಿನಿಯಮಗಳ ರಚನೆ ವಿಧಾನ.**– (1) ಕಾರ್ಯನಿರ್ವಹಣಾ ಪರಿಷತ್ತು ರಚಿಸಿದ ಮೊದಲ ಪರಿನಿಯಮಗಳನ್ನು ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಕಾರ್ಯನಿರ್ವಹಣಾ ಪರಿಷತ್ತು ಸಲ್ಲಿಸಿದ ಮೊದಲ ಪರಿನಿಯಮಗಳನ್ನು ಪ್ರಬಂಧಕ ಮಂಡಳಿಯು ಪರಿಗಣಿಸತಕ್ಕದ್ದು ಹಾಗೂ ತಾನು ಅವಶ್ಯವೆಂದು ಭಾವಿಸಬಹುದಾದ ಅಂಥ ಮಾರ್ಪಾಡುಗಳು, ಯಾವುದಾದರು ಇದ್ದಲ್ಲಿ, ಅವುಗಳೊಡನೆ ತನ್ನ ಅನುಮೋದನೆಯನ್ನು ನೀಡತಕ್ಕದ್ದು.

(3) ವಿಶ್ವವಿದ್ಯಾಲಯವು, ಪ್ರಬಂಧಕ ಮಂಡಳಿಯು ಅನುಮೋದಿಸಿದ ಮೊದಲ ಪರಿನಿಯಮಗಳನ್ನು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ಪ್ರಕಟಿಸತಕ್ಕದ್ದು ಮತ್ತು ತದನಂತರ ಮೊದಲ ಪರಿನಿಯಮಗಳ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**34. ಪರಿನಿಯಮಗಳ ತಿದ್ದುಪಡಿಯ ಅಧಿಕಾರ.**– ಪ್ರಬಂಧಕ ಮಂಡಳಿಯು ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸಬಹುದು ಅಥವಾ ಪರಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ಅವನ್ನು ನಿರಸನಗೊಳಿಸಬಹುದು.

**35. ವಿನಿಯಮಗಳು.**– ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ವಿನಿಯಮಗಳು ಈ ಮುಂದಿನ ವಿಷಯಗಳಿಗೆ ಉಪಬಂಧಗಳನ್ನು ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ವಿದ್ಯಾರ್ಥಿ ಪಟ್ಟಿಯಲ್ಲಿ ಅವರುಗಳ ದಾಖಲಾತಿ ಹಾಗೂ ಮುಂದುವರಿಕೆ;

(ii) ವಿಶ್ವವಿದ್ಯಾಲಯದ ಎಲ್ಲಾ ಪದವಿಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ನಿಗದಿಪಡಿಸತಕ್ಕ ವ್ಯಾಸಂಗ ಕ್ರಮಗಳು;

(iii) ಪದವಿಗಳ ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರದಾನ;

(iv) ಸಂಶೋಧನಾ ವೇತನಗಳು (ಫೆಲೋಶಿಪ್), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಪದಕಗಳು ಮತ್ತು ಬಹುಮಾನಗಳನ್ನು ನೀಡಲು ಷರತ್ತುಗಳು;

(v) ಪರೀಕ್ಷೆಗಳನ್ನು ನಡೆಸುವುದು ಹಾಗೂ ಪರೀಕ್ಷೆ ನಡೆಸುವ ಸಂಸ್ಥೆಗಳ, ಪರೀಕ್ಷಕರ, ಪರೀಕ್ಷಾ ಮೇಲ್ವಿಚಾರಕರ, ಟ್ಯಾಬುಲೇಟರ್‌ಗಳ ಮತ್ತು ಮಾಡರೇಟರ್‌ಗಳ ನೇಮಕಾತಿ ಷರತ್ತುಗಳು ಮತ್ತು ವಿಧಾನ ಹಾಗೂ ಅವರ ಕರ್ತವ್ಯಗಳು;

(vi) ವಿಶ್ವವಿದ್ಯಾಲಯದ ಪರೀಕ್ಷೆಗಳ, ಪದವಿಗಳ ಹಾಗೂ ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರವೇಶಕ್ಕೆ ವಿಧಿಸತಕ್ಕ ಶುಲ್ಕ;

(vii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನಲ್ಲಿ ವಿದ್ಯಾರ್ಥಿಗಳ ನಿವಾಸಕ್ಕಾಗಿ ಷರತ್ತುಗಳು;

(viii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಶಿಸ್ತು ಪಾಲನೆ;

(ix) ಈ ಅಧಿನಿಯಮದ ಅಡಿಯಲ್ಲಿನ ಪರಿನಿಯಮಗಳಲ್ಲಿ ಉಪಬಂಧ ಕಲ್ಪಿಸಬಹುದಾಂಥ ಇತರ ಎಲ್ಲಾ ವಿಷಯಗಳು.

**36. ವಿನಿಯಮಗಳ ರಚನೆ ವಿಧಾನ.**– ವಿನಿಯಮಗಳನ್ನು ಶೈಕ್ಷಣಿಕ ಪರಿಷತ್ತು ರಚಿಸತಕ್ಕದ್ದು ಹಾಗೂ ಕಾರ್ಯನಿರ್ವಹಣಾ ಪರಿಷತ್ತು ಅನುಮೋದಿಸತಕ್ಕದ್ದು.

**37. ವಿನಿಯಮಗಳ ತಿದ್ದುಪಡಿಗೆ ಅಧಿಕಾರ.**– ಕಾರ್ಯನಿರ್ವಹಣಾ ಪರಿಷತ್ತಿನ ಅನುಮೋದನೆಯೊಡನೆ ಶೈಕ್ಷಣಿಕ ಪರಿಷತ್ತು ಹೊಸ ವಿನಿಯಮಗಳನ್ನು ಅಥವಾ ಹೆಚ್ಚುವರಿ ವಿನಿಯಮಗಳನ್ನು ರಚಿಸಬಹುದು ಅಥವಾ ವಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ನಿರಸನಗೊಳಿಸಬಹುದು.

**38. ಶುಲ್ಕ ನಿಯಂತ್ರಣ ಸಮಿತಿ.**– (1) ಸರ್ಕಾರವು ರಚಿಸಿದ ನಿವೃತ್ತ ಸರ್ವೋಚ್ಚ ನ್ಯಾಯಾಲಯದ ಅಥವಾ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು ಮುಖ್ಯಸ್ಥರಾಗಿರುವ ಮತ್ತು ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ, ಉನ್ನತ ಶಿಕ್ಷಣ ಪ್ರಭಾರದಲ್ಲಿರುವ ಸರ್ಕಾರದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು, ವೈದ್ಯಕೀಯ ಶಿಕ್ಷಣದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು, ಒಬ್ಬ ಮಹಿಳೆಯೂ ಸೇರಿದಂತೆ ಪ್ರಬಂಧಕ ಮಂಡಲಿಯ ನಾಮನಿರ್ದೇಶಿಸಿದ ಇಬ್ಬರು ಶಿಕ್ಷಣ ತಜ್ಞರು ಇವರುಗಳನ್ನು ಒಳಗೊಂಡ ಒಂದು ಶುಲ್ಕ ನಿಯಂತ್ರಣ ಸಮಿತಿಯು, 9ನೇ ಪ್ರಕರಣದ ಅಡಿಯಲ್ಲಿ ಕರ್ನಾಟಕದ ವಿದ್ಯಾರ್ಥಿಗಳಿಗಾಗಿ ಮೀಸಲಿರಿಸಿದ ವಿಶ್ವವಿದ್ಯಾಲಯದ ಸ್ಥಾನಗಳ ಶುಲ್ಕವನ್ನು ನಿಯಂತ್ರಿಸತಕ್ಕದ್ದು. ಸಮಿತಿಯಲ್ಲಿ ಈ ಉದ್ದೇಶಕ್ಕಾಗಿ ಒಬ್ಬರು ಖ್ಯಾತ ಚಾರ್ಟರ್ಡ್ ಅಕೌಂಟೆಂಟ್ ರವರನ್ನು ಸಹ ಸದಸ್ಯನನ್ನಾಗಿ ಸೇರಿಸಿಕೊಳ್ಳತಕ್ಕದ್ದು.

(2) ಸಮಿತಿಯು, ವಿಶ್ವವಿದ್ಯಾಲಯದ ಪ್ರವೇಶಾತಿಯಲ್ಲಿ ಮತ್ತು ಶುಲ್ಕಗಳ ಸಂಗ್ರಹಣೆಯ ಅನುಪಾಲನೆ ನೋಡಿಕೊಳ್ಳತಕ್ಕದ್ದು.

## ಅಧ್ಯಾಯ – VI

### ಸಂಕೀರ್ಣ

**39. ನೌಕರರ ಸೇವಾ ಷರತ್ತುಗಳು.**– (1) ಪರಿನಿಯಮಗಳ ಮತ್ತು ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಥವಾ ನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳು, ಯಾವುದಾದರೂ ಇದ್ದಲ್ಲಿ, ಅವುಗಳಿಗೆ ಒಳಪಟ್ಟು ಪ್ರತಿಯೊಬ್ಬ ನೌಕರನು ಲಿಖಿತ ಕರಾರಿನ ಅಡಿಯಲ್ಲಿ ನೇಮಕಗೊಳ್ಳತಕ್ಕದ್ದು ಮತ್ತು ಅದನ್ನು ವಿಶ್ವವಿದ್ಯಾಲಯದಲ್ಲಿ ಇಟ್ಟುಕೊಳ್ಳತಕ್ಕದ್ದು ಹಾಗೂ ಅದರ ಪ್ರತಿಯನ್ನು ಸಂಬಂಧಪಟ್ಟ ನೌಕರನಿಗೆ ನೀಡತಕ್ಕದ್ದು.

(2) ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಕಾರ್ಯವಿಧಾನಗಳ ಮೂಲಕ ನಿಯಂತ್ರಿಸತಕ್ಕದ್ದು.

(3) ಕರಾರಿನಿಂದಾಗಿ ವಿಶ್ವವಿದ್ಯಾಲಯ ಮತ್ತು ನೌಕರನ ಮಧ್ಯದಲ್ಲಿ ಉದ್ಭವಿಸಬಹುದಾದ ಯಾವುದೇ ವಿವಾದವನ್ನು, ಲಿಖಿತ ಕರಾರಿನಲ್ಲಿ ಉಪಬಂಧಿಸಿದ ವಿಧಾನದಲ್ಲಿ ಹಾಗೂ ಪರಿನಿಯಮಗಳ ಅನುಸಾರವಾಗಿ ಪರಿಹರಿಸತಕ್ಕದ್ದು.

**40. ಮೇಲ್ಮನವಿ ಹಕ್ಕು.**– ವಿಶ್ವವಿದ್ಯಾಲಯವು ತನ್ನ ನೌಕರರ ಅಥವಾ ವಿದ್ಯಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡ ಸಂದರ್ಭದಲ್ಲಿ, ಬಾಧಿತ ನೌಕರ ಅಥವಾ ವಿದ್ಯಾರ್ಥಿಗಳು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಅಂಥ ಪ್ರಾಧಿಕಾರಕ್ಕೆ ಮೇಲ್ಮನವಿಯನ್ನು ಸಲ್ಲಿಸುವ ಹಕ್ಕನ್ನು ಹೊಂದಿರತಕ್ಕದ್ದು.

**41. ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿ.**– ವಿಶ್ವವಿದ್ಯಾಲಯವು, ತನ್ನ ನೌಕರರ ಪ್ರಯೋಜನಕ್ಕಾಗಿ, ಪರಿನಿಯಮಗಳು ಮತ್ತು ಜಾರಿಯಲ್ಲಿರುವ ಕಾನೂನುಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿಯನ್ನು ರಚಿಸತಕ್ಕದ್ದು ಹಾಗೂ ಅಂಥ ವಿಮಾ ಯೋಜನೆಗಳನ್ನು ಒದಗಿಸತಕ್ಕದ್ದು.

**42. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು.**– ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಅಥವಾ ಇತರ ಸಂಸ್ಥೆಯ ಸದಸ್ಯನಾಗಿ ಯಾವೊಬ್ಬ ವ್ಯಕ್ತಿಯು ಸೂಕ್ತವಾಗಿ ಆಯ್ಕೆಯಾಗಿದ್ದಾನೆಯೇ ಅಥವಾ ನೇಮಕಗೊಂಡಿದ್ದಾನೆಯೇ ಅಥವಾ ಅದಕ್ಕೆ ಅರ್ಹನಾಗಿದ್ದಾನೆಯೇ ಎಂಬ ಯಾವುದೇ ಪ್ರಶ್ನೆ ಉದ್ಭವಿಸಿದರೆ, ಆ ವಿಷಯವನ್ನು ತೀರ್ಮಾನಕ್ಕಾಗಿ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**43. ಸಮಿತಿಗಳ ರಚನೆ.**– 22ನೇ ಪ್ರಕರಣದಲ್ಲಿ ನಮೂದಿಸಿದ ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಅಧಿಕಾರವನ್ನು ಹೊಂದಿರುವ ಅಂಥ ಸದಸ್ಯರನ್ನು ಒಳಗೊಂಡ ಅಂಥ ಪ್ರಾಧಿಕಾರದ ಒಂದು ಸಮಿತಿಯನ್ನು ರಚಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**44. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು.**– ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಂಸ್ಥೆಯ ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ಪೈಕಿ ಯಾವುದೇ ಸ್ಥಾನವು ಆಕಸ್ಮಿಕವಾಗಿ ಖಾಲಿಯಾದರೆ, ಯಾರ ಸ್ಥಾನವು ಖಾಲಿಯಾಗಿ ತುಂಬಬೇಕಾಗಿ ಬಂದಿದೆಯೋ ಆ ಸದಸ್ಯನನ್ನು ಯಾವ ರೀತಿಯಲ್ಲಿ ಆರಿಸಲಾಗಿತ್ತೋ ಅದೇ ರೀತಿಯಲ್ಲಿ ಹೊಸ ಸದಸ್ಯನನ್ನು ಆರಿಸಿ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ಖಾಲಿ ಸ್ಥಾನವನ್ನು ಭರ್ತಿ ಮಾಡಿದ ವ್ಯಕ್ತಿಯು ಆತನು ಯಾವ ಸದಸ್ಯನ

ಸ್ಥಾನದಲ್ಲಿ ಭರ್ತಿಯಾಗಿರುವವನೋ ಆ ಸದಸ್ಯನು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯನಾಗಿ ಉಳಿಯುತ್ತಿದ್ದ ಬಾಕಿ ಅವಧಿಯವರೆಗೆ ಮಾತ್ರ ಸದಸ್ಯನಾಗಿರತಕ್ಕದ್ದು.

**45. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.–** ಈ ಅಧಿನಿಯಮಕ್ಕೆ ಅಥವಾ ಪರಿನಿಯಮಗಳಿಗೆ ಅಥವಾ ನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ವಿಶ್ವವಿದ್ಯಾಲಯದ ಯಾವೊಬ್ಬ ಅಧಿಕಾರಿ ಅಥವಾ ಇತರ ನೌಕರರ ವಿರುದ್ಧ ಯಾವುದೇ ದಾವೆ ಅಥವಾ ಇತರ ಕಾನೂನು ವ್ಯವಹರಣೆಗಳನ್ನು ನಡೆಸಲು ಅವಕಾಶ ಇರತಕ್ಕದ್ದಲ್ಲ.

**46. ತಾತ್ಕಾಲಿಕ ಉಪಬಂಧಗಳು.–** ಈ ಅಧಿನಿಯಮದ ಮತ್ತು ಪರಿನಿಯಮಗಳ ಯಾವುದೇ ಇತರ ಉಪಬಂಧಗಳಲ್ಲಿ ಏನೇ ಇದ್ದರೂ.–

(i) ಮೊದಲ ಕುಲಪತಿ ಮತ್ತು ಸಹಕುಲಪತಿ, ಯಾರಾದರೂ ಇದ್ದರೆ, ಅವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(ii) ಮೊದಲ ಕುಲಸಚಿವರನ್ನು ಮತ್ತು ಮೊದಲ ಹಣಕಾಸು ಅಧಿಕಾರಿಯವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು; ಮತ್ತು

(iii) ಮೊದಲ ಕಾರ್ಯನಿರ್ವಹಣಾ ಪರಿಷತ್ತು, ಮೊದಲ ಹಣಕಾಸು ಸಮಿತಿ, ಮೊದಲ ಸಂಶೋಧನಾ ಪರಿಷತ್ತು ಹಾಗೂ ಮೊದಲ ಶೈಕ್ಷಣಿಕ ಪರಿಷತ್ತನ್ನು ಕುಲಾಧಿಪತಿಯವರು ರಚಿಸತಕ್ಕದ್ದು.

**47. ಶಾಶ್ವತ ಶಾಸನಬದ್ಧ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಕನಿಷ್ಠ ಇಪ್ಪತ್ತೈದು ಕೋಟಿ ರೂಪಾಯಿಗಳನ್ನುಳ್ಳ ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು ಇದರ ಪೈಕಿ ಕನಿಷ್ಠ ಹದಿನೈದು ಕೋಟಿ ರೂಪಾಯಿಗಳನ್ನು ನಗದು ಹಣದ ರೂಪದಲ್ಲಿ ಮತ್ತು ಉಳಿದದ್ದು ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ಇರತಕ್ಕದ್ದು ಮತ್ತು ಇದನ್ನು ತಾನಾಗಿಯೇ ಹೆಚ್ಚಿಸಬಹುದಾಗಿದ್ದು ಆದರೆ ಕಡಿಮೆ ಮಾಡತಕ್ಕದ್ದಲ್ಲ:

ಪರಂತು, ಬೆಂಗಳೂರು ಅಥವಾ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊರಗಿರುವ ವಿಶ್ವವಿದ್ಯಾಲಯದ ಸಂದರ್ಭದಲ್ಲಿ ಕನಿಷ್ಠ ಹತ್ತು ಕೋಟಿ ರೂಪಾಯಿಗಳು ನಗದು ರೂಪದಲ್ಲಿರತಕ್ಕದ್ದು ಮತ್ತು ಉಳಿದ ಐದು ಕೋಟಿ ರೂಪಾಯಿಗಳು ಬ್ಯಾಂಕ್ ಗ್ಯಾರಂಟಿಯ ರೂಪದಲ್ಲಿರತಕ್ಕದ್ದು.

(2) ವಿಶ್ವವಿದ್ಯಾಲಯವು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಹಣವನ್ನು ಹೂಡಲು ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯವು ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಗೆ ವರ್ಗಾವಣೆ ಮಾಡಬಹುದು. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನೂ ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(4) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಿದ ವರಮಾನದ ಶೇಕಡಾ ಎಪ್ಪತ್ತೈದರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತೈದರಷ್ಟನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಯಲ್ಲಿ ತೊಡಗಿಸತಕ್ಕದ್ದು.

**48. ವಿಶ್ವವಿದ್ಯಾಲಯದ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ನಿಧಿಗಳನ್ನು ಒಳಗೊಂಡ ವಿಶ್ವವಿದ್ಯಾಲಯದ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದು ಕಾಲಕಾಲಕ್ಕೆ ಸ್ವೀಕರಿಸಬಹುದಾದ ದೇಣಿಗೆಗಳು ಮತ್ತು ಇತರ ನಿಧಿಗಳನ್ನು ಒಳಗೊಂಡಿರತಕ್ಕದ್ದು.

(2) ವಿಶ್ವವಿದ್ಯಾಲಯವು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ವಿಶ್ವವಿದ್ಯಾಲಯದ ದತ್ತಿನಿಧಿಯನ್ನು ಹೂಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯ ದತ್ತಿ ನಿಧಿಯು, ವಿಶ್ವವಿದ್ಯಾಲಯವು ತನ್ನ ಸಾಮಾಜಿಕ ಧ್ಯೇಯೋದ್ದೇಶಗಳನ್ನು ನೆರವೇರಿಸುವ ಸಂದರ್ಭದಲ್ಲಿ ಮತ್ತು/ಅಥವಾ ಮುಂಗಾಣದ ಸನ್ನಿವೇಶದಲ್ಲಿ ಉದ್ಭವಿಸಬಹುದಾದ ಹಣಕಾಸು ಸವಾಲುಗಳಿಂದ ತನ್ನನ್ನು ರಕ್ಷಿಸಿಕೊಳ್ಳುವುದಕ್ಕಾಗಿ, ಸ್ವಇಚ್ಛೆಯಿಂದ ನಿರ್ವಹಿಸಿಕೊಂಡು ಬರಲು ಮತ್ತು ಜವಾಬ್ದಾರಿಯಿಂದ ಹಣ ಹೂಡಿಕೆ ಮಾಡಲು ಇಚ್ಛೆಯುಳ್ಳವರಾಗಿ ಸ್ವಯಂ ವಿಧಿಸಿಕೊಂಡ ನಿಧಿಯಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಗೆ ವರ್ಗಾಯಿಸಬಹುದು. ವಿಶ್ವವಿದ್ಯಾಲಯದ ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನು ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(5) ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಬರುವ ವರಮಾನದ ಶೇಕಡಾ ಎಂಭತ್ತರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸದ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತರಷ್ಟನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**49. ಸಾಮಾನ್ಯ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಸಾಮಾನ್ಯ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯವು ವಿಧಿಸಬಹುದಾದ ಎಲ್ಲಾ ಶುಲ್ಕಗಳು;

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೆ ಇರುವ ಯಾವುದೇ ಇತರ ಮೂಲದಿಂದ ಸ್ವೀಕರಿಸಲಾದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ದೇಣಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು;

(2) ಸಾಮಾನ್ಯ ನಿಧಿಗೆ ಜಮಾ ಮಾಡುವ ನಿಧಿಗಳನ್ನು ವಿಶ್ವವಿದ್ಯಾಲಯದ ಎಲ್ಲಾ ಆವರ್ತಕ ವೆಚ್ಚಗಳನ್ನು ಭರಿಸಲು ಉಪಯೋಗಿಸಿಕೊಳ್ಳತಕ್ಕದ್ದು.

**50. ಅಭಿವೃದ್ಧಿ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಅಭಿವೃದ್ಧಿ ನಿಧಿಯನ್ನು ಸಹ ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಅಭಿವೃದ್ಧಿ ಶುಲ್ಕಗಳು;

(ii) ವಿಶ್ವವಿದ್ಯಾಲಯದ ಅಭಿವೃದ್ಧಿಯ ಉದ್ದೇಶಗಳಿಗಾಗಿ ಯಾವುದೇ ಇತರ ಮೂಲಗಳಿಂದ ಸ್ವೀಕರಿಸಿದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ವಂತಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು; ಮತ್ತು

(v) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಲಾದ ಎಲ್ಲಾ ವರಮಾನಗಳು.

(2) ಅಭಿವೃದ್ಧಿ ನಿಧಿಗೆ ಕಾಲಕಾಲಕ್ಕೆ ಜಮಾ ಮಾಡಿದ ನಿಧಿಯನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಉಪಯೋಗಿಸಿಕೊಳ್ಳತಕ್ಕದ್ದು.

**51. ನಿಧಿಗಳ ನಿರ್ವಹಣೆ.–** 47, 48, 49 ಮತ್ತು 50ನೇ ಪ್ರಕರಣಗಳಡಿಯಲ್ಲಿ ಸ್ಥಾಪಿಸಲಾದ ನಿಧಿಗಳನ್ನು ಪ್ರಬಂಧಕ ಮಂಡಳಿಯ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ನಿಯಂತ್ರಿಸತಕ್ಕದ್ದು ಹಾಗೂ ನಿರ್ವಹಿಸತಕ್ಕದ್ದು.

**52. ವಾರ್ಷಿಕ ವರದಿ.–** (1) ವಿಶ್ವವಿದ್ಯಾಲಯದ ವಾರ್ಷಿಕ ವರದಿಯನ್ನು ಕಾರ್ಯನಿರ್ವಹಣಾ ಪರಿಷತ್ತಿನ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ಅದರ ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಪ್ರಬಂಧಕ ಮಂಡಳಿಯು ವಾರ್ಷಿಕ ವರದಿಯನ್ನು ತನ್ನ ಸಭೆಯಲ್ಲಿ ಪರಿಗಣಿಸತಕ್ಕದ್ದು ಹಾಗೂ ಅದನ್ನು ಮಾರ್ಪಾಡುಗಳೊಡನೆ ಅಥವಾ ಮಾರ್ಪಾಡುಗಳಿಲ್ಲದೆ ಅನುಮೋದಿಸಬಹುದು.

(3) ಪ್ರಬಂಧಕ ಮಂಡಳಿಯು ಸೂಕ್ತವಾಗಿ ಅನುಮೋದಿಸಿದ ವಾರ್ಷಿಕ ವರದಿಯ ಒಂದು ಪ್ರತಿಯನ್ನು ಪ್ರತಿವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ಡಿಸೆಂಬರ್ 31ಕ್ಕೆ ಮೊದಲು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**53. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.–** (1) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕ ಪತ್ರ ಮತ್ತು ಜಮಾ ಖರ್ಚು ಪಟ್ಟಿಯನ್ನು ಕಾರ್ಯನಿರ್ವಹಣಾ ಪರಿಷತ್ತಿನ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯಕ್ಕೆ ಎಲ್ಲಾ ಮೂಲಗಳಿಂದ ಪ್ರಾಪ್ತವಾಗುವ ಅಥವಾ ಸ್ವೀಕರಿಸಲಾಗುವ ಎಲ್ಲಾ ನಿಧಿಗಳು ಹಾಗೂ ವಿತರಿಸಿದ ಅಥವಾ ಸಂದಾಯ ಮಾಡಿದ ಎಲ್ಲಾ ಮೊಬಲಗುಗಳನ್ನು ವಿಶ್ವವಿದ್ಯಾಲಯವು ನಿರ್ವಹಿಸುವ ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕಪತ್ರಗಳನ್ನು ಪ್ರತಿ ವರ್ಷವೂ ಭಾರತದ ಚಾರ್ಟರ್ಡ್ ಅಕೌಂಟೆಂಟ್‌ಗಳ ಸಂಸ್ಥೆಯ ಸದಸ್ಯರಾಗಿರುವ ಒಬ್ಬ ಲೆಕ್ಕಪರಿಶೋಧಕರಿಂದ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಲೆಕ್ಕಪರಿಶೋಧನಾ ವರದಿಯೊಡನೆ, ಪ್ರತಿ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ನವೆಂಬರ್ 30ಕ್ಕೆ ಮೊದಲು ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(4) ವಾರ್ಷಿಕ ಲೆಕ್ಕಪತ್ರಗಳು, ಜಮಾಖರ್ಚು ಪಟ್ಟಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಪ್ರಬಂಧಕ ಮಂಡಳಿಯು ತನ್ನ ಸಭೆಯಲ್ಲಿ ಪರ್ಯಾಲೋಚಿಸತಕ್ಕದ್ದು ಮತ್ತು ಪ್ರಬಂಧಕ ಮಂಡಳಿಯು ಅದನ್ನು ತನ್ನ ಅಭಿಪ್ರಾಯಗಳೊಡನೆ ಸಂದರ್ಶಕರಿಗೆ ಹಾಗೂ ಸರ್ಕಾರಕ್ಕೆ ಪ್ರತಿ ವರ್ಷದ ಡಿಸೆಂಬರ್ 31 ರಂದು ಅಥವಾ ಅದಕ್ಕೆ ಮೊದಲು ಕಳುಹಿಸತಕ್ಕದ್ದು.

(5) ಲೆಕ್ಕಪರಿಶೋಧಕರ ವರದಿಯಲ್ಲಿ ಯಾವುದೇ ಮುಖ್ಯ ಬದಲಾವಣೆ ಇದ್ದ ಸಂದರ್ಭದಲ್ಲಿ, ರಾಜ್ಯ ಸರ್ಕಾರವು ವಿಶ್ವವಿದ್ಯಾಲಯಕ್ಕೆ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಅಂಥ ನಿರ್ದೇಶನಗಳು ವಿಶ್ವವಿದ್ಯಾಲಯದ ಮೇಲೆ ಬಂಧನಕಾರಿಯಾಗಿರತಕ್ಕದ್ದು.

**54. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಮಿತಿಯ ಯಾವುದೇ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ ಅಥವಾ ಗೊತ್ತುವಳಿಯು ಅಥವಾ ವಿಶ್ವವಿದ್ಯಾಲಯದ ಸ್ವಾಧೀನದಲ್ಲಿರುವ ಇತರ ದಾಖಲೆಗಳು ಅಥವಾ ವಿಶ್ವವಿದ್ಯಾಲಯವು ಯುಕ್ತವಾಗಿ ನಿರ್ವಹಿಸುವ ಯಾವುದೇ ರಿಜಿಸ್ಟರ್‌ನಲ್ಲಿಯ ಯಾವುದೇ ನಮೂದುಗಳ ಪ್ರತಿಯನ್ನು, ಅದರ ಮೇಲೆ ಕುಲಸಚಿವರು ಪ್ರಮಾಣೀಕರಿಸಿದ್ದರೆ, ಅದನ್ನು ಅಂಥ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ, ಗೊತ್ತುವಳಿ ಅಥವಾ ದಾಖಲೆ ಅಥವಾ ರಿಜಿಸ್ಟರ್‌ನಲ್ಲಿ ಇರುವ ನಮೂದನ್ನು ಮೇಲ್ನೋಟದ ಸಾಕ್ಷ್ಯವೆಂಬುದಾಗಿ ಸ್ವೀಕರಿಸತಕ್ಕದ್ದು ಮತ್ತು ವಿಷಯಗಳ ಸಾಕ್ಷಿಯಾಗಿ ಅಂಗೀಕರಿಸತಕ್ಕದ್ದು ಹಾಗೂ ಮೂಲ ದಾಖಲೆಗಳನ್ನೇ ಸಲ್ಲಿಸಿದ್ದರೆ ಅದನ್ನು, ದಾಖಲಿಸಿರುವ ವಿಷಯಗಳು ಮತ್ತು ವಹಿವಾಟುಗಳ ಸಾಕ್ಷ್ಯವಾಗಿ ಅಂಗೀಕರಿಸಲಾಗುತ್ತಿತ್ತೋ, ಅದೇ ರೀತಿಯಲ್ಲಿ ಇವನ್ನೂ ಸಾಕ್ಷ್ಯವಾಗಿ ಅಂಗೀಕರಿಸತಕ್ಕದ್ದು.

**55. ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ.–** ರಾಜ್ಯಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಥವಾ ಅದರಲ್ಲಿ ಇರುವ ಯಾವುವೇ ಉಪಬಂಧಗಳನ್ನು ಅಥವಾ ಅದರಡಿಯಲ್ಲಿ ರಚಿಸಿದ ಯಾವುವೇ ನಿಯಮಗಳು ಅಥವಾ ಆದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿರ್ದೇಶನ ನೀಡುವುದು ಅವಶ್ಯವೆಂದು ಅಥವಾ ಉಚಿತವೆಂದು ಅಭಿಪ್ರಾಯಪಟ್ಟಲ್ಲಿ ಅದು ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ ಅಥವಾ ಸಂದರ್ಭಾನುಸಾರವಾಗಿ ಕಾರ್ಯನಿರ್ವಹಣಾ ಪರಿಷತ್ತು ಅಂಥ ಪ್ರತಿಯೊಂದು ನಿರ್ದೇಶನವನ್ನು ಪಾಲಿಸತಕ್ಕದ್ದು.

**56. ದಂಡಗಳು.–** (1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿತವಾದ ನಿಯಮಗಳು ಉಪಬಂಧಗಳನ್ನು ಅಥವಾ ಯಾವುದೇ ಪರೀಕ್ಷಾ ವಿಷಯಗಳನ್ನು ಅಥವಾ ಪದವಿಗಳನ್ನು ನೀಡುವುದಕ್ಕೆ ಅಥವಾ ಅಂಕಪಟ್ಟಿಗಳನ್ನು ನೀಡುವುದಕ್ಕೆ ಸಂಬಂಧಪಟ್ಟ ವಿಷಯಗಳಲ್ಲಿ ಉಲ್ಲಂಘನೆಗಳನ್ನು ಮಾಡುವ ಯಾವೊಬ್ಬ ವ್ಯಕ್ತಿಯು, ಅಪರಾಧ ನಿರ್ಣಯವಾದ ಮೇಲೆ, ಐವತ್ತು ಸಾವಿರ ರೂಪಾಯಿಗಳಿಗೆ ಕಡಿಮೆಯಲ್ಲದ ಆದರೆ ಹತ್ತು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಆರು ತಿಂಗಳ ಅವಧಿಗಿಂತ ಕಡಿಮೆಯಲ್ಲದ ಆದರೆ ಎರಡು ವರ್ಷಗಳ ಅವಧಿಯವರೆಗೆ ವಿಸ್ತರಿಸಬಹುದಾದ ಕಾರಾವಾಸದಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು:

ಪರಂತು, ವಿಶ್ವವಿದ್ಯಾಲಯವೂ ಸಹ ಒಳಗೊಂಡಿರುವಲ್ಲಿ, ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಈ ಅಧಿನಿಯಮದ ಅಡಿಯಲ್ಲಿ ಮಂಜೂರು ಮಾಡಲಾದ ಅನುಮತಿ ಪತ್ರವನ್ನು ಹಿಂತೆಗೆದುಕೊಳ್ಳತಕ್ಕದ್ದು.

(2) ಈ ಪ್ರಕರಣದ ಅಡಿಯಲ್ಲಿಯ ದಂಡವನ್ನು ಇತರ ಯಾವುದೇ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಲಾದ ದಂಡಕ್ಕೆ ಬಾಧಕವಾಗದಂತೆ ವಿಧಿಸಬಹುದು.

**57. ಪ್ರವೇಶಿಸುವ ಮತ್ತು ಪರಿಶೋಧಿಸುವ ಅಧಿಕಾರ.–** ಈ ಉದ್ದೇಶಕ್ಕಾಗಿ, ರಾಜ್ಯಸರ್ಕಾರದಿಂದ ಪ್ರಾಧಿಕೃತಗೊಂಡ 'ಎ' ಸಮೂಹದ ಅಧಿಕಾರಿ ದರ್ಜೆಗಿಂತ ಕಡಿಮೆಯಿಲ್ಲದ ದರ್ಜೆಯ ಯಾವೊಬ್ಬ ಅಧಿಕಾರಿಯು, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಶನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ 37) ಅಡಿಯಲ್ಲಿ ನಿರ್ದಿಷ್ಟಪಡಿಸಿರಬಹುದಾದ ಅಂಥ ಷರತ್ತುಗಳಿಗೆ ಒಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ, ಆ ಅಧಿನಿಯಮದ 9ನೇ ಪ್ರಕರಣದ ಅಡಿಯಲ್ಲಿ ಉಪಬಂಧಿಸಲಾದಂತಹವೇ ಅಧಿಕಾರಗಳನ್ನು ಚಲಾಯಿಸಲು ಮತ್ತು ಪ್ರಕಾರ್ಯಗಳನ್ನು ನೆರವೇರಿಸಲು ಅಧಿಕೃತನಾದ ಅಧಿಕಾರಿ ಎಂಬುದಾಗಿ ಭಾವಿಸತಕ್ಕದ್ದು.

**58. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ನಿರ್ದೇಶನವನ್ನು ನೀಡುವ ಅಧಿಕಾರ.–** (1) ವಿಶ್ವವಿದ್ಯಾಲಯವು ತನ್ನ ರಚನೆ ಅಥವಾ ನಿಗಮನವನ್ನು ನಿಯಂತ್ರಿಸುವ ಕಾನೂನಿಗೆ ಅನುಸಾರವಾಗಿ ತನ್ನ ಸಮಾಪನವನ್ನು ಉದ್ದೇಶಿಸಿದ್ದಲ್ಲಿ, ಅದು ಕನಿಷ್ಠ ಆರು ತಿಂಗಳ ಲಿಖಿತ ಪೂರ್ವ ಸೂಚನೆಯನ್ನು (ನೋಟಿಸು) ಸರ್ಕಾರಕ್ಕೆ ನೀಡತಕ್ಕದ್ದು.

(2) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಈ ಕೆಳಗಿನವುಗಳ ಬಗ್ಗೆ, ಎಂದರೆ:–

(i) ಪದವಿಯನ್ನು ನೀಡುವುದಕ್ಕಾಗಿ ಬೋಧನೆಯ ಗುಣಮಟ್ಟ;

(ii) ಶಿಕ್ಷಣದ ಗುಣಮಟ್ಟ;

(iii) ಉನ್ನತ ಶಿಕ್ಷಣದ ವ್ಯಾಪಾರೀಕರಣವನ್ನು ತಡೆಗಟ್ಟುವುದು;

(iv) ಅಧಿನಿಯಮದ ಉಪಬಂಧಗಳ ಉಲ್ಲಂಘನೆಯ ಬಗ್ಗೆ, ಯಾವುದಾದರೂ ಇದ್ದಲ್ಲಿ,

– ಇವುಗಳ ಬಗ್ಗೆ ನಿಯತಕಾಲಿಕ ಪರಿವೀಕ್ಷಣೆಯನ್ನು ನಡೆಸತಕ್ಕದ್ದು ಮತ್ತು ಸರ್ಕಾರಕ್ಕೆ ವರದಿಯನ್ನು ಕಳುಹಿಸತಕ್ಕದ್ದು.

(3) ದುರ್ವ್ಯವಹರಣೆ, ದುರಾಡಳಿತ ಮತ್ತು ಅಶಿಸ್ತು ಆಗಿದೆ ಎಂಬುದನ್ನು ಗುರುತಿಸಿದರೆ, ಸರ್ಕಾರವು, ವಿಶ್ವವಿದ್ಯಾಲಯದ ಆಡಳಿತವರ್ಗದವರಿಗೆ ಆಡಳಿತವನ್ನು ಸರಿಪಡಿಸಬೇಕೆಂದು ನಿರ್ದೇಶನಗಳನ್ನು ನೀಡತಕ್ಕದ್ದು. ನಿಯಮಿಸಬಹುದಾದ ಅಂಥ ಅವಧಿಯೊಳಗೆ ಆ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುವ ಹಕ್ಕು ಸರ್ಕಾರದಲ್ಲಿ ನಿಹಿತವಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ವಿಧಾನವು, ಸರ್ಕಾರವು ಈ ಸಂಬಂಧದಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು:

ಪರಂತು, ವಿಶ್ವವಿದ್ಯಾಲಯವು ತನ್ನ ಕಾರಣಗಳನ್ನು ಹೇಳಿಕೊಳ್ಳಲು ಸಮಂಜಸ ಅವಕಾಶಗಳನ್ನು ನೀಡಿದ ಹೊರತು ಅಂಥ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

(5) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೋಟಿಸನ್ನು ಸ್ವೀಕರಿಸಿದ ಮೇಲೆ, ಸರ್ಕಾರವು ಸಂಬಂಧಿಸಿದ ನಿಯಂತ್ರಣಾ ಪ್ರಾಧಿಕಾರದೊಡನೆ ಸಮಾಲೋಚಿಸಿ, ವಿಶ್ವವಿದ್ಯಾಲಯವನ್ನು ಸಮಾಪ್ತನಗೊಳಿಸಲು ಅಥವಾ ವ್ಯಾಸಂಗ ಕ್ರಮವನ್ನು ಪರಿಸಮಾಪನಗೊಳಿಸಲು ಉದ್ದೇಶಿಸಿದ ದಿನಾಂಕದಿಂದ, ವಿಶ್ವವಿದ್ಯಾಲಯದಲ್ಲಿ ನಿಯತ ವ್ಯಾಸಂಗ ಕ್ರಮಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕೊನೆಯ ತಂಡ (ಬ್ಯಾಚ್) ತನ್ನ ವ್ಯಾಸಂಗ ಕ್ರಮವನ್ನು ಮುಗಿಸುವವರೆಗೆ ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು.

**59. ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು.-** (1) 58ನೇ ಪ್ರಕರಣದ (5)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ಅದರ ಆಡಳಿತಾತ್ಮಕ ವೆಚ್ಚಗಳನ್ನು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿ, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಭರಿಸತಕ್ಕದ್ದು.

(2) ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ವಿಶ್ವವಿದ್ಯಾಲಯದ ವೆಚ್ಚವನ್ನು ಭರಿಸಲು 47, 48, 49 ಮತ್ತು 50ನೇ ಪ್ರಕರಣಗಳ ಅಡಿಯಲ್ಲಿ ಉಲ್ಲೇಖಿಸಲಾದ ನಿಧಿಯು ಸಾಕಷ್ಟು ಇಲ್ಲದಿದ್ದಲ್ಲಿ, ಅಂಥ ವೆಚ್ಚವನ್ನು ಸರ್ಕಾರವು, ವಿಶ್ವವಿದ್ಯಾಲಯದ ಸ್ವತ್ತುಗಳು ಮತ್ತು ಆಸ್ತಿಗಳನ್ನು ವಿಲೇ ಮಾಡುವ ಮೂಲಕ ಭರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಸಮಾಪನೆಯು ದುರ್ವ್ಯವಹರಣೆ ಅಥವಾ ದುರಾಡಳಿತದ ಕಾರಣಗಳಿಗಾಗಿ ಆಗಿದ್ದರೆ, ಸರ್ಕಾರವು ಅಂಥ ದುರ್ವ್ಯವಹಾರಕ್ಕೆ ಅಥವಾ ದುರಾಡಳಿತಕ್ಕೆ ಹೊಣೆಯಾಗಿರುವ ವ್ಯಕ್ತಿಗಳನ್ನು ಗುರುತಿಸುವ ಮತ್ತು ಅವರ ಮೇಲೆ ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ದಂಡನೆಯನ್ನು ವಿಧಿಸಲು ಸ್ವತಂತ್ರವಾಗಿರತಕ್ಕದ್ದು.

**60. ತೊಂದರೆಗಳ ನಿವಾರಣೆಗೆ ಅಧಿಕಾರ.-** (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಅಥವಾ ಆದೇಶದ ಮೂಲಕ ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಐದು ವರ್ಷಗಳು ಮುಕ್ತಾಯವಾದ ತರುವಾಯ ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಅಧಿಸೂಚನೆ ಅಥವಾ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

**61. ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ.-** (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ಹೊರಡಿಸಲಾದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಉಭಯ ಸದನಗಳು ಒಪ್ಪಿದರೆ ತದನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ದತಿಯು ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವನ್ನು ಉಂಟುಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಜಿ.ಕೆ. ಬೋರೇಗೌಡ**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ.

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) (500 ಪ್ರತಿಗಳು)

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ



| ಭಾಗ - IV-A<br>Part - IV-A | ಬೆಂಗಳೂರು, ಗುರುವಾರ, ಫೆಬ್ರವರಿ ೭, ೨೦೧೩ (ಮಾಘ ೧೮, ಶಕ ವರ್ಷ ೧೯೩೪)<br>Bangalore, Thursday, February 7, 2013 (Magha 18, Shaka Varsha 1934) | ನಂ.೧೫೪<br>No. 154 |
|---|---|---|



ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ

ಅಧಿಸೂಚನೆ

**ಸಂಖ್ಯೆ: ಸಂವ್ಯಶಾಇ 82 ಶಾಸನ 2012, ಬೆಂಗಳೂರು, ದಿನಾಂಕ: 07.02.2013**

ಪಿಇಎಸ್ ವಿಶ್ವವಿದ್ಯಾಲಯ ವಿಧೇಯಕ, 2012–ಇದಕ್ಕೆ 2013ರ ಫೆಬ್ರವರಿ ತಿಂಗಳ ಐದನೇ ದಿನಾಂಕದಂದು ಘನತೆವೆತ್ತ ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2013ರ ಕರ್ನಾಟಕ ಅಧಿನಿಯಮ ಸಂಖ್ಯೆ: 16 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2013 ರ ಕರ್ನಾಟಕ ಅಧಿನಿಯಮ ಸಂಖ್ಯೆ: 16**

(2013ರ ಫೆಬ್ರವರಿ ಮಾಹೆಯ ಏಳನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಪಿಇಎಸ್ ವಿಶ್ವವಿದ್ಯಾಲಯ ಅಧಿನಿಯಮ, 2012**

(2013ರ ಫೆಬ್ರವರಿ ಮಾಹೆಯ ಐದನೇ ದಿನಾಂಕದಂದು ರಾಜ್ಯಪಾಲರ ಅನುಮತಿಯನ್ನು ಪಡೆಯಲಾಗಿದೆ)

ಇಂಜಿನಿಯರಿಂಗ್, ವೈದ್ಯಕೀಯ, ಔಷಧಗಾರಿಕೆ, ವಿಜ್ಞಾನ, ಕಲೆ, ಸಮಾಜ ವಿಜ್ಞಾನ, ಕಂಪ್ಯೂಟರ್ ಅನ್ವಯಕಗಳು, ಮಾನವಿಕಗಳು ಮತ್ತು ವ್ಯವಸ್ಥಾಪನೆ ವಿಷಯ ಕ್ಷೇತ್ರಗಳಲ್ಲಿ ಮತ್ತು ಇವುಗಳಿಗೆ ಸಂಬಂಧಪಟ್ಟ ವಲಯಗಳು ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯ ಮಟ್ಟದ ಶಿಕ್ಷಣದಲ್ಲಿ ಪ್ರಗತಿಪರ ವಿಚಾರಗಳನ್ನು ಪ್ರೋತ್ಸಾಹಿಸಲು ಮತ್ತು ಕೈಗೊಳ್ಳಲು ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದಕ್ಕಾಗಿ ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡು ಬರುವ ಉದ್ದೇಶಗಳಿಗಾಗಿ ಇಂಜಿನಿಯರಿಂಗ್, ವೈದ್ಯಕೀಯ, ಔಷಧಗಾರಿಕೆ, ವಿಜ್ಞಾನ, ಕಲೆ, ಸಮಾಜ ವಿಜ್ಞಾನ, ಕಂಪ್ಯೂಟರ್ ಅನ್ವಯಕಗಳು, ಮಾನವಿಕಗಳು ಮತ್ತು ವ್ಯವಸ್ಥಾಪನೆ ವಿಷಯ ಕ್ಷೇತ್ರಗಳಲ್ಲಿ ಮತ್ತು ಇವುಗಳಿಗೆ ಸಂಬಂಧಪಟ್ಟ ವಲಯಗಳು ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯಮಟ್ಟದ ಶಿಕ್ಷಣದಲ್ಲಿ ಪ್ರಗತಿಪರ ವಿಚಾರಗಳನ್ನು ಪ್ರೋತ್ಸಾಹಿಸಲು ಮತ್ತು ಕೈಗೊಳ್ಳಲು ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೂರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:–

## ಅಧ್ಯಾಯ – I
## ಪ್ರಾರಂಭಿಕ

1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.- (1) ಈ ಅಧಿನಿಯಮವನ್ನು ಪಿಇಎಸ್ ವಿಶ್ವವಿದ್ಯಾಲಯ ಅಧಿನಿಯಮ, 2012 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು, ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. ಪರಿಭಾಷೆಗಳು.**- ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) "ಶೈಕ್ಷಣಿಕ ಪರಿಷತ್ತು" (ಅಕೆಡೆಮಿಕ್ ಕೌನ್ಸಿಲ್) ಎಂದರೆ, 26ನೇ ಪ್ರಕರಣದ ಅಡಿಯಲ್ಲಿ ನಿರ್ದಿಷ್ಟಪಡಿಸಲಾದ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು;

(ಬಿ) "ಕಾರ್ಯಸೂಚಿ ವಿಷಯಗಳು", ಎಂದರೆ, ಪರಿನಿಯಮಗಳಲ್ಲಿ ಹೆಸರಿಸಬಹುದಾದ ಮತ್ತು ಒಂದು ಸಭೆಯಲ್ಲಿ ಆ ವಿಷಯಗಳನ್ನು ಮತ್ತು ಕಲಾಪಗಳನ್ನು ಅನುಮೋದಿಸಬಹುದೆಂದು ತಮ್ಮ ಸಮ್ಮತಿ ಸೂಚಿಸಿ ಕುಲಾಧಿಪತಿಯವರು ಮುಂಚಿತವಾಗಿಯೇ ಲಿಖಿತ ಅನುಮೋದನೆಯನ್ನು ಕೊಟ್ಟಿದ್ದಾಗ ಮಾತ್ರವೇ ಸಂದರ್ಭಾನುಸಾರ, ಪ್ರಬಂಧಕ ಮಂಡಳಿ ಅಥವಾ ಕಾರ್ಯ ನಿರ್ವಹಣಾ ಪರಿಷತ್ತು ಅಥವಾ ಯಾವುದೇ ಸಮಿತಿಯವರು ಕಾರ್ಯಸೂಚಿಯಲ್ಲಿ ಸೇರಿಸಬಹುದಾದ ಅಥವಾ ಸಭೆಯಲ್ಲಿ ಚರ್ಚೆಗೆ ತೆಗೆದುಕೊಂಡು ನಿರ್ಣಯವನ್ನು ಕೊಡಬಹುದಾದ ಎಲ್ಲಾ ವಿಷಯಗಳು ಮತ್ತು ಕಲಾಪಗಳು;

(ಸಿ) "ಪ್ರಬಂಧಕ ಮಂಡಳಿ" ಎಂದರೆ; 24ನೇ ಪ್ರಕರಣದ ಅಡಿಯಲ್ಲಿ ರಚಿಸಲಾದ ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ;

(ಡಿ) "ಕುಲಾಧಿಪತಿ", "ಸಹಕುಲಾಧಿಪತಿ", "ಕುಲಪತಿ", "ಸಹಕುಲಪತಿ" ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಕುಲಾಧಿಪತಿ, ಸಹಕುಲಾಧಿಪತಿ, ಕುಲಪತಿ ಮತ್ತು ಸಹಕುಲಪತಿ;

(ಇ) "ಕ್ಯಾಂಪಸ್" ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುವ ಒಂದು ಕ್ಯಾಂಪಸ್;

(ಎಫ್) "ಸಮಿತಿಗಳು" ಎಂದರೆ, ಈ ಅಧಿನಿಯಮದಡಿಯಲ್ಲಿ ರಚಿಸಿದ ಅಥವಾ ಸಂದರ್ಭಾನುಸಾರವಾಗಿ ವಿಶ್ವವಿದ್ಯಾಲಯದ ವಿವಿಧ ಕಾರ್ಯಕರ್ತರು ರಚಿಸಿರುವ ಸಮಿತಿಗಳು, ಮತ್ತು ಅದರಲ್ಲಿ ಶೋಧನಾ ಸಮಿತಿ, ನಾಮನಿರ್ದೇಶನ ಸಮಿತಿ, ಹಣಕಾಸು ಸಮಿತಿ, ಹಣಕಾಸು ಪರಿಷತ್ತು ಮತ್ತು ಅಂಥ ಇತರ ಸಮಿತಿಗಳು ಒಳಗೊಳ್ಳುತ್ತವೆ;

(ಜಿ) "ಘಟಕ ಕಾಲೇಜು" ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುತ್ತಿರುವ ಒಂದು ಕಾಲೇಜು ಅಥವಾ ಸಂಸ್ಥೆ;

(ಎಚ್) "ಕಾರ್ಯನಿರ್ವಹಣಾ ಪರಿಷತ್ತು" ಎಂದರೆ, 25ನೇ ಪ್ರಕರಣದ ಅಡಿಯಲ್ಲಿ ರಚಿಸಿದ ವಿಶ್ವವಿದ್ಯಾಲಯದ ಕಾರ್ಯನಿರ್ವಹಣಾ ಪರಿಷತ್ತು;

(ಐ) "ಹಣಕಾಸು ಪರಿಷತ್ತು" ಎಂದರೆ, 28ನೇ ಪ್ರಕರಣದ ಅಡಿಯಲ್ಲಿ ರಚಿಸಿದ ವಿಶ್ವವಿದ್ಯಾಲಯದ ಹಣಕಾಸು ಪರಿಷತ್ತು;

(ಜೆ) "ಸರ್ಕಾರ" ಎಂದರೆ, ಕರ್ನಾಟಕ ಸರ್ಕಾರ;

(ಕೆ) "ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳು" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು, ಭಾರತೀಯ ವೈದ್ಯಕೀಯ ಪರಿಷತ್ತು, ಭಾರತೀಯ ಔಷಧ ವಿಜ್ಞಾನ ಪರಿಷತ್ತು, ಭಾರತೀಯ ಕೃಷಿ ಸಂಶೋಧನಾ ಪರಿಷತ್ತು, ರಾಷ್ಟ್ರೀಯ ಮೌಲ್ಯಮಾಪನ ಮತ್ತು ಅಧಿಮಾನ್ಯತಾ ಪರಿಷತ್ತು, ರಾಷ್ಟ್ರೀಯ ಬೋಧಕ ಶಿಕ್ಷಣ ಪರಿಷತ್ತು, ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಪರಿಷತ್ತುಗಳಂಥವುಗಳು ಉನ್ನತ ಶಿಕ್ಷಣದಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುವಂತೆ ನೋಡಿಕೊಳ್ಳುವುದಕ್ಕಾಗಿ ಹಾಗೂ ಗುಣಮಟ್ಟಗಳು ಮತ್ತು ಷರತ್ತುಗಳನ್ನು ವಿಧಿಸುವುದಕ್ಕಾಗಿ ಕೇಂದ್ರ ಸರ್ಕಾರವು ಸ್ಥಾಪಿಸಿರುವ ಒಂದು ಸಂಸ್ಥೆ ಮತ್ತು ಇದರಲ್ಲಿ ಸರ್ಕಾರವೂ ಸೇರಿರುತ್ತದೆ;

(ಎಲ್) "ನಿಯಮಿಸಲಾದುದು" ಎಂದರೆ, ಈ ಅಧಿನಿಯಮದಡಿಯಲ್ಲಿ ಸರ್ಕಾರವು ರಚಿಸಿದ ನಿಯಮಗಳ ಮೂಲಕ ನಿಯಮಿಸಲಾದುದು;

(ಎಂ) "ಒಂದು ಘಟಕ ಕಾಲೇಜಿಗೆ ಸಂಬಂಧಪಟ್ಟಂತೆ ಪ್ರಾಂಶುಪಾಲರು" ಎಂದರೆ, ಘಟಕ ಕಾಲೇಜಿನ ಮುಖ್ಯಸ್ಥರು ಮತ್ತು ಪ್ರಾಂಶುಪಾಲರು ಇಲ್ಲದಿದ್ದಲ್ಲಿ ಅಥವಾ ನೇಮಕವಾದ ಪ್ರಾಂಶುಪಾಲರ ಗೈರುಹಾಜರಿಯಲ್ಲಿ ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ತಾತ್ಕಾಲಿಕವಾಗಿ ನೇಮಕಗೊಂಡಿರುವ ಉಪಪ್ರಾಂಶುಪಾಲರು ಅಥವಾ ಯಾವೊಬ್ಬ ಇತರ ವ್ಯಕ್ತಿಯೂ ಇದರಲ್ಲಿ ಒಳಗೊಳ್ಳುತ್ತಾರೆ;

(ಎನ್) "ಕುಲಸಚಿವರು" ಎಂದರೆ, ವಿಶ್ವವಿದ್ಯಾಲಯದ ಕುಲಸಚಿವರು;

(ಒ) "ಪ್ರಾದೇಶಿಕ ಕೇಂದ್ರ" ಎಂದರೆ, ಯಾವುದೇ ಪ್ರದೇಶದಲ್ಲಿನ ಅಧ್ಯಯನ ಕೇಂದ್ರಗಳ ಕಾರ್ಯವನ್ನು ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ಮಾಡುವ ಉದ್ದೇಶಕ್ಕಾಗಿ ಮತ್ತು ಅಂಥ ಕೇಂದ್ರಕ್ಕೆ ಕಾರ್ಯನಿರ್ವಹಣಾ ಪರಿಷತ್ತು ವಹಿಸಿಕೊಡಬಹುದಾದ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸುವುದಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಅಥವಾ ನಿರ್ವಹಿಸಿಕೊಂಡುಬರುವ ಒಂದು ಕೇಂದ್ರ;

(ಪಿ) "ಸೊಸೈಟಿ" ಎಂದರೆ, ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ, 1960ರ (1960ರ ಕರ್ನಾಟಕ ಅಧಿನಿಯಮ 17) ಅಡಿಯಲ್ಲಿ ನೋಂದಾಯಿತವಾಗಿರುವ ಪೀಪಲ್ಸ್ ಎಜುಕೇಷನ್ ಸೊಸೈಟಿ;

(ಕ್ಯೂ) ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ "ಪ್ರಾಯೋಜಕ ಪ್ರಾಧಿಕಾರ" ಅಥವಾ "ಪ್ರಾಯೋಜಕ ಸಂಸ್ಥೆ" ಎಂದರೆ, ಸದರಿ ಸೊಸೈಟಿ;

(ಆರ್) "ರಾಜ್ಯ" ಎಂದರೆ, ಕರ್ನಾಟಕ ರಾಜ್ಯ;

(ಎಸ್) "ಪರಿನಿಯಮಗಳು" ಮತ್ತು "ವಿನಿಯಮಗಳು" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಅನುಕ್ರಮವಾಗಿ ವಿಶ್ವವಿದ್ಯಾಲಯದ ಪರಿನಿಯಮಗಳು ಮತ್ತು ವಿನಿಯಮಗಳು;

(ಟಿ) "ಅಧ್ಯಯನ ಕೇಂದ್ರ" ಎಂದರೆ, ವಿದ್ಯಾರ್ಥಿಗಳಿಗೆ ಅಗತ್ಯವಾದ ಮಾರ್ಗದರ್ಶನ ಮಾಡುವ, ಸಲಹೆಗಳನ್ನು ನೀಡುವ ಅಥವಾ ಇತರ ಯಾವುದೇ ನೆರವನ್ನು ನೀಡುವ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಮತ್ತು ನಿರ್ವಹಿಸಿಕೊಂಡುಬಂದ ಒಂದು ಕೇಂದ್ರ;

(ಯು) "ಅಧ್ಯಾಪಕರು" ಎಂದರೆ, ಒಬ್ಬ ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಅಡ್‌ಜಂಕ್ಟ್ ಪ್ರಾಧ್ಯಾಪಕರು ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಒಂದು ಘಟಕ ಕಾಲೇಜಿನಲ್ಲಿ ಬೋಧಿಸುವುದಕ್ಕೆ ಅಥವಾ ಸಂಶೋಧನೆ ನಡೆಸುವುದಕ್ಕೆ ಅಥವಾ ಸಂಶೋಧನೆಗೆ ಮಾರ್ಗದರ್ಶನ ನೀಡುವುದಕ್ಕೆ ನೇಮಕವಾದ ಅಂಥ ಇತರ ವ್ಯಕ್ತಿ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗವು ನಿರ್ದಿಷ್ಟಪಡಿಸಿದ ಗುಣಮಟ್ಟಗಳಿಗೆ ಅನುಸಾರವಾಗಿ ಇರುವ ಘಟಕ ಕಾಲೇಜಿನ ಪ್ರಾಂಶುಪಾಲರು ಇದರಲ್ಲಿ ಒಳಗೊಳ್ಳುತ್ತಾರೆ;

(ವಿ) "ವಿಶ್ವವಿದ್ಯಾಲಯ ಅನುದಾನಗಳ ಆಯೋಗ" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) 4ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ಆಯೋಗ;

(ಡಬ್ಲ್ಯೂ) "ವಿಶ್ವವಿದ್ಯಾಲಯ" ಎಂದರೆ, ಈ ಅಧಿನಿಯಮದಡಿಯಲ್ಲಿ ಸ್ಥಾಪಿಸಿ ನಿಗಮಿತಗೊಳಿಸಲಾದ ಪಿಇಎಸ್ ವಿಶ್ವವಿದ್ಯಾಲಯ;

(ಎಕ್ಸ್) "ಸಂದರ್ಶಕರು" ಎಂದರೆ, 13ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ವಿಶ್ವವಿದ್ಯಾಲಯದ ಸಂದರ್ಶಕರು.

## ಅಧ್ಯಾಯ– II

## ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

**3. ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ.–** (1) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಹಕ್ಕನ್ನು ಸೊಸೈಟಿಯು ಹೊಂದಿರತಕ್ಕದ್ದು.

(2) ಸೊಸೈಟಿಯು ರಾಜ್ಯ ಸರ್ಕಾರಕ್ಕೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವವನ್ನು ಸಲ್ಲಿಸತಕ್ಕದ್ದು.

(3) ಪ್ರಸ್ತಾವವು ಈ ಮುಂದಿನ ವಿವರಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಸೊಸೈಟಿಯ ವಿವರಗಳೊಂದಿಗೆ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು;

(ii) ವಿಶ್ವವಿದ್ಯಾಲಯದ ವ್ಯಾಪ್ತಿ ಮತ್ತು ಸ್ಥಾನಮಾನ ಹಾಗೂ ಭೂಮಿಯ ಲಭ್ಯತೆ;

(iii) ಪ್ರಾರಂಭದ ದಿನಾಂಕದಿಂದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳಬೇಕೆಂದಿರುವ ಅಧ್ಯಯನ ಮತ್ತು ಸಂಶೋಧನಾ ಕಾರ್ಯಕ್ರಮಗಳ ಸ್ವರೂಪ ಮತ್ತು ಬಗೆಗಳು;

(iv) ಪ್ರಾರಂಭಿಸಬೇಕೆಂದು ಪ್ರಸ್ತಾಪಿಸಿರುವ ವ್ಯಾಸಂಗ ವಿಭಾಗಗಳು (ಫ್ಯಾಕಲ್ಟಿಗಳು), ಅಧ್ಯಯನ ಕ್ರಮಗಳು ಮತ್ತು ಸಂಶೋಧನೆಗಳ ಸ್ವರೂಪ;

(v) ಕಟ್ಟಡಗಳು, ಸಲಕರಣೆಗಳು ಮತ್ತು ರಚನಾ ಸೌಕರ್ಯಗಳನ್ನು ಒದಗಿಸುವಂಥ ಕ್ಯಾಂಪಸ್ ಅಭಿವೃದ್ಧಿ;

(vi) ಪ್ರಾರಂಭದ ದಿನಾಂಕದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಗಾಗಿ ಬಂಡವಾಳ ವೆಚ್ಚದ ಹಂತಗಳು;

(vii) ಬಾಬುವಾರು ಆವರ್ತಕ ವೆಚ್ಚ, ಆರ್ಥಿಕ ಮೂಲಗಳು ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ತಗಲುವ ಅಂದಾಜು ವೆಚ್ಚ;

(viii) ಸಂಪನ್ಮೂಲ ಸಂಗ್ರಹಣೆಗಾಗಿ ಯೋಜನೆ ಮತ್ತು ಅದಕ್ಕೆ ಬಂಡವಾಳದಿಂದ ತಗಲುವ ವೆಚ್ಚ ಹಾಗೂ ಪ್ರತಿಯೊಂದು ಮೂಲಕ್ಕೂ ಮರು ಸಂದಾಯ ಮಾಡುವ ರೀತಿ;

(ix) ವಿದ್ಯಾರ್ಥಿಗಳಿಂದ ಶುಲ್ಕ ವಸೂಲು ಮಾಡಿ ಆಂತರಿಕವಾಗಿ ನಿಧಿ ಸಂಗ್ರಹಿಸುವ ಯೋಜನೆ, ಸಲಹಾ ಸೇವೆ ಮತ್ತು ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಿಗೆ ಸಂಬಂಧಿಸಿದ ಇತರ ಚಟುವಟಿಕೆಗಳಿಂದ ನಿರೀಕ್ಷಿತ ವರಮಾನಗಳು ಮತ್ತು ಇತರ ನಿರೀಕ್ಷಿತ ವರಮಾನಗಳು;

(x) ಘಟಕವೊಂದಕ್ಕೆ ತಗಲುವ ವೆಚ್ಚದ ವಿವರಗಳು, ಆರ್ಥಿಕವಾಗಿ ದುರ್ಬಲವಾದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕ, ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿ ವೇತನದಲ್ಲಿ ನೀಡುವ ರಿಯಾಯಿತಿ ಅಥವಾ ವಿನಾಯತಿಯ ಪರಿಮಿತಿಯ ವಿವರಗಳನ್ನು ಮತ್ತು ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳಿಗೆ ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳು ಪ್ರಾಯೋಜಿಸಿದ ವಿದ್ಯಾರ್ಥಿಗಳಿಗೆ ಮತ್ತು ಭಾರತವನ್ನುಳಿದು ಇತರ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ವಿಧಿಸತಕ್ಕ ಶುಲ್ಕದ ದರಗಳು ಬೇರೆ ಬೇರೆ ಇದ್ದಲ್ಲಿ ಅವುಗಳನ್ನು ಸೂಚಿಸುವ ಶುಲ್ಕ ರಚನೆಯ ವಿವರಗಳು;

(xi) ಸಂಬಂಧಪಟ್ಟ ವಿದ್ಯಾ ವಿಭಾಗದಲ್ಲಿ ಎಷ್ಟು ವರ್ಷಗಳ ಅನುಭವ ಮತ್ತು ಪರಿಣತಿಯನ್ನು ಸೊಸೈಟಿಯು ದೊರಕಿಸಿಕೊಡಲಿದೆ ಹಾಗೂ ಅದರ ಹಣಕಾಸಿನ ಸಂಪನ್ಮೂಲಗಳು;

(xii) ವಿಶ್ವವಿದ್ಯಾಲಯದಲ್ಲಿರುವ ಅಧ್ಯಯನ ಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕಾಗಿ ಇರುವ ವ್ಯವಸ್ಥೆ; ಮತ್ತು

(xiii) ವಿಶ್ವವಿದ್ಯಾಲಯವು ಸ್ಥಾಪನೆಯಾಗುವುದಕ್ಕೆ ಮೊದಲು ನೆರವೇರಿಸಬೇಕೆಂದು ರಾಜ್ಯ ಸರ್ಕಾರವು ಅಗತ್ಯಪಡಿಸಬಹುದಾದ ಅಂಥ ಇತರ ಷರತ್ತುಗಳ ನೆರವೇರಿಕೆಯ ಹಂತ.

(4) ಸ್ವೀಕರಿಸಿದ ಪ್ರಸ್ತಾವಗಳನ್ನು ಪರೀಕ್ಷಿಸಲು ರಾಜ್ಯ ಸರ್ಕಾರವು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಪದನಿಮಿತ್ತ ಸದಸ್ಯರಾದ ಮೂವರು ಸದಸ್ಯರುಗಳನ್ನು ಒಳಗೊಂಡ ಒಂದು ಪರಿಶೋಧನಾ ಸಮಿತಿಯನ್ನು ರಚಿಸತಕ್ಕದ್ದು ಮತ್ತು ಅದು ರಾಜ್ಯ ಸರ್ಕಾರಕ್ಕೆ ಶಿಫಾರಸ್ಸನ್ನು ಮಾಡತಕ್ಕದ್ದು.

**4. ವಿಶ್ವವಿದ್ಯಾಲಯದ ಸ್ಥಾಪನೆ.–** (1) ರಾಜ್ಯ ಸರ್ಕಾರವು, ಪರಿಶೋಧನಾ ಸಮಿತಿಯ ಶಿಫಾರಸ್ಸುಗಳನ್ನು ಪರಿಗಣಿಸಿದ ಮತ್ತು ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ,–

(i) ಸೊಸೈಟಿಯು ಸಾಕಷ್ಟು ಮೂಲ ಸೌಕರ್ಯಗಳನ್ನು ಹೊಂದಿದ್ದು, ಒಂದು ವಿಶ್ವವಿದ್ಯಾಲಯವನ್ನು ನಡೆಸಲು ಸಮರ್ಥವಾಗಿದೆ ಎಂದು ಅದು ಮನಗಂಡರೆ;

(ii) ಪ್ರದೇಶಕ್ಕನುಸಾರವಾಗಿ ಕೆಳಗೆ ನಿರ್ದಿಷ್ಟಪಡಿಸಿದ ವ್ಯಾಪ್ತಿಗೆ ಭೂಮಿಯ ಒಡೆತನವನ್ನು ಹೊಂದಿರತಕ್ಕದ್ದು, ಎಂದರೆ:–

(ಎ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯೊಳಗಿದ್ದರೆ ಇಪ್ಪತ್ತೈದು ಎಕರೆಗಳು;

(ಬಿ) ಭೂಮಿಯ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯಿಂದ ಹೊರಗೆ ಇದ್ದು ಆದರೆ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಪ್ರದೇಶದೊಳಗೆ ಇದ್ದರೆ ನಲವತ್ತು ಎಕರೆಗಳು;

(ಸಿ) ಭೂಮಿಯ (ಎ) ಮತ್ತು (ಬಿ) ಖಂಡಗಳಲ್ಲಿ ನಿರ್ದಿಷ್ಟಪಡಿಸಿರುವ ಸ್ಥಳಗಳನ್ನು ಹೊರತುಪಡಿಸಿದ್ದರೆ ಅರವತ್ತು ಎಕರೆಗಿಂತ ಕಡಿಮೆ ಇರತಕ್ಕದ್ದಲ್ಲ.

ಮೇಲೆ ನಿರ್ದಿಷ್ಟಪಡಿಸಿರುವ ಭೂಮಿಯು ಏಕ ಘಟಕ (ಸಿಂಗಲ್ ಬ್ಲಾಕ್)ದಲ್ಲಿರತಕ್ಕದ್ದು ಮತ್ತು ಅದು ಸಂಬಂಧಪಟ್ಟ ಸೊಸೈಟಿಯ/ವಿಶ್ವವಿದ್ಯಾನಿಯದ ಹೆಸರಿನಲ್ಲಿಯೇ ಇರತಕ್ಕದ್ದು. 3ನೇ ಪ್ರಕರಣದ (3)ನೇ ಉಪ-ಪ್ರಕರಣದಲ್ಲಿ ಅಗತ್ಯಪಡಿಸಲಾದಂತೆ ಒದಗಿಸಿರುವ ವಿವರಗಳ ಆಧಾರದ ಮೇಲೆ, 48ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಲಾದಂತೆ ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಲು ಸೊಸೈಟಿಗೆ ಸರ್ಕಾರವು ನಿರ್ದೇಶಿಸಬಹುದು.

(2) ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಸ್ಥಾಪನೆಯ ತರುವಾಯ, ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, "ಪಿಇಎಸ್ ವಿಶ್ವವಿದ್ಯಾಲಯ" ಎಂಬ ಹೆಸರಿನ ಏಕಾತ್ಮಕ ಸ್ವರೂಪದ ಒಂದು ವಿಶ್ವವಿದ್ಯಾಲಯವನ್ನು ರಾಜ್ಯದಲ್ಲಿ ಸ್ಥಾಪಿಸುವುದಕ್ಕೆ ಮಂಜೂರಾತಿಯನ್ನು ನೀಡಬಹುದು.

(3) ವಿಶ್ವವಿದ್ಯಾಲಯದ ಕೇಂದ್ರಕಾರ್ಯಸ್ಥಾನವು ಬೆಂಗಳೂರಿನಲ್ಲಿ ಇರತಕ್ಕದ್ದು. ರಾಜ್ಯ ಸರ್ಕಾರದ ಪೂರ್ವಾನುಮತಿಯನ್ನು ಪಡೆದುಕೊಳ್ಳುವುದಕ್ಕೊಳಪಟ್ಟು ಹಾಗೂ ವಿಶ್ವವಿದ್ಯಾಲಯ ಅನುದಾನ ಆಯೋಗದ ಗುಣಮಟ್ಟಗಳಿಗನುಸಾರವಾಗಿ ವಿಶ್ವವಿದ್ಯಾಲಯವು ತನ್ನ ಕ್ಯಾಂಪಸ್ಸುಗಳನ್ನು ಅಥವಾ ಪ್ರಾದೇಶಿಕ ಕೇಂದ್ರಗಳನ್ನು, ಅಧ್ಯಯನ ಕೇಂದ್ರಗಳನ್ನು ಕರ್ನಾಟಕದ ಯಾವುದೇ ಭಾಗದಲ್ಲಿ ಹೊಂದಿರತಕ್ಕದ್ದು.

(4) ಮೊದಲ ಕುಲಾಧಿಪತಿಯವರು, ಮೊದಲ ಸಹಕುಲಾಧಿಪತಿಯವರು, ಮೊದಲ ಕುಲಪತಿಯವರು, ಮೊದಲ ಸಹಕುಲಪತಿಯವರು, ಪ್ರಬಂಧಕ ಮಂಡಳಿಯ ಮೊದಲ ಸದಸ್ಯರುಗಳು, ಕಾರ್ಯನಿರ್ವಹಣಾ ಪರಿಷತ್ತಿನ ಹಾಗೂ ಶೈಕ್ಷಣಿಕ ಪರಿಷತ್ತಿನ ಮೊದಲ ಸದಸ್ಯರುಗಳು ಮತ್ತು ಇನ್ನು ಮುಂದೆ, ಅಂಥ ಅಧಿಕಾರಿಗಳು ಅಥವಾ ಸದಸ್ಯರುಗಳಾಗಬಹುದಾದಂಥ ಎಲ್ಲಾ ವ್ಯಕ್ತಿಗಳು, ಅಂಥ ಪದ ಅಥವಾ ಸದಸ್ಯತ್ವವನ್ನು ಹೊಂದಿರುವುದು ಮುಂದುವರೆಯುವವರೆಗೆ, ಒಂದು ನಿಗಮಿತ ನಿಕಾಯವನ್ನು ರಚಿಸತಕ್ಕದ್ದು ಮತ್ತು ಅದು ವಿಶ್ವವಿದ್ಯಾಲಯದ ಹೆಸರಿನಲ್ಲಿ ದಾವೆ ಹೂಡಬಹುದು ಮತ್ತು ದಾವೆಗೊಳಗಾಗಬಹುದು.

(5) (2)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಸ್ಥಾಪನೆಗೆ ಮಂಜೂರಾತಿ ದೊರೆತ ಮೇಲೆ, ವಿಶ್ವವಿದ್ಯಾಲಯದ ಉದ್ದೇಶಕ್ಕಾಗಿ, ಸೊಸೈಟಿಯು ಆರ್ಜಿಸಿದ, ಸೃಜಿಸಿದ, ಏರ್ಪಾಟು ಮಾಡಿಕೊಂಡ ಅಥವಾ ಕಟ್ಟಲ್ಪಟ್ಟ ಭೂಮಿ ಮತ್ತು ಇತರ ಚರ ಮತ್ತು ಸ್ಥಿರ ಸ್ವತ್ತು, ವಿಶ್ವವಿದ್ಯಾಲಯದಲ್ಲಿ ನಿಹಿತವಾಗಿರತಕ್ಕದ್ದು.

(6) ವಿಶ್ವವಿದ್ಯಾಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂಥ ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

(7) ವಿಶ್ವವಿದ್ಯಾಲಯದಲ್ಲಿನ ಭೂಮಿ, ಕಟ್ಟಡ ಮತ್ತು ಇತರ ಸ್ವತ್ತುಗಳನ್ನು ವಿಶ್ವವಿದ್ಯಾಲಯದ ಉದ್ದೇಶಗಳಿಗೆ ಆನುಷಂಗಿಕವಾಗಿರುವುದನ್ನು ಹೊರತುಪಡಿಸಿ ಇತರ ಯಾವುದೇ ಉದ್ದೇಶಕ್ಕಾಗಿ ಬಳಸತಕ್ಕದ್ದಲ್ಲ.

**5. ಅನುದಾನಗಳು ಮತ್ತು ಹಣಕಾಸು ನೆರವು.–** ವಿಶ್ವವಿದ್ಯಾಲಯವು ಸ್ವಂತ ಧನಮೂಲ ಉಳ್ಳದ್ದಾಗಿರತಕ್ಕದ್ದು ಮತ್ತು ರಾಜ್ಯದಿಂದ ಅಥವಾ ರಾಜ್ಯದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಇತರ ಸಂಸ್ಥೆ ಅಥವಾ ನಿಗಮದಿಂದ ಯಾವುದೇ ನಿರ್ವಹಣಾ ಸಹಾಯ ಅನುದಾನ ಅಥವಾ ಯಾವುದೇ ಹಣಕಾಸು ನೆರವನ್ನು ಹಕ್ಕಿನಿಂದ ಕೇಳತಕ್ಕದ್ದಲ್ಲ ಅಥವಾ ಅದನ್ನು ಪಡೆಯಲು ಹಕ್ಕನ್ನು ಹೊಂದಿರತಕ್ಕದ್ದಲ್ಲ:

ಪರಂತು, ರಾಜ್ಯವು,–

(ಎ) ಇತರ ರಾಜ್ಯ ಸರ್ಕಾರದ ಸಂಘಟನೆಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿರುವಂಥದ್ದೇ ಸಂಶೋಧನೆ, ಅಭಿವೃದ್ಧಿ ಮತ್ತಿತರ ಚಟುವಟಿಕೆಗಳಿಗಾಗಿ; ಅಥವಾ

(ಬಿ) ಸರ್ಕಾರದಿಂದ ನೆರವನ್ನು ಪಡೆಯುವ ಯಾವುದೇ ನಿರ್ದಿಷ್ಟ ಸಂಶೋಧನೆ ಅಥವಾ ಕಾರ್ಯಕ್ರಮಗಳಿಗಾಗಿ; ಮತ್ತು

3

(ಸಿ) ರಾಜ್ಯ ಕಾರ್ಯನೀತಿಯ ಬದಲಾವಣೆಗೆ ಒಳಪಟ್ಟು ಅಥವಾ ಅನ್ಯಥಾ ಇದೇ ಬಗೆಯ ವಿಶ್ವವಿದ್ಯಾಲಯಗಳಿಗಾಗಿ ಅಥವಾ ಅವುಗಳ ಪ್ರಯೋಜನಕ್ಕಾಗಿ,

-ಅನುದಾನದ ಮೂಲಕ ಅಥವಾ ಅನ್ಯಥಾ ಹಣಕಾಸು ಬೆಂಬಲವನ್ನು ಒದಗಿಸಬಹುದು:

ಮತ್ತು ಪರಂತು, ವಿಶ್ವವಿದ್ಯಾಲಯವು, ಯಾವುದೇ ಇತರ ಮೂಲದಿಂದ ಯಾವುದೇ ಆರ್ಥಿಕ ನೆರವನ್ನು ಸ್ವೀಕರಿಸಬಹುದು.

**6. ಘಟಕ ಕಾಲೇಜು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಅಥವಾ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದಕ್ಕೆ ಅಧಿಕಾರ.**- ವಿಶ್ವವಿದ್ಯಾಲಯದ ಸ್ಥಾಪನೆಯ ತರುವಾಯ ಐದು ವರ್ಷಗಳು ಪೂರ್ಣಗೊಂಡ ಮೇಲೆ, ವಿಶ್ವವಿದ್ಯಾಲಯ ಅನುದಾನ ಆಯೋಗದ ಮತ್ತು ಇತರ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ಗುಣಮಟ್ಟಗಳಿಗೆ ಒಳಪಟ್ಟು, ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ವಿಶ್ವವಿದ್ಯಾಲಯವು, ರಾಜ್ಯದಲ್ಲಿ ತನಗೆ ಸೂಕ್ತವೆನಿಸುವಂಥ ಸ್ಥಳಗಳಲ್ಲಿ ಘಟಕ ಕಾಲೇಜುಗಳು, ಪ್ರಾದೇಶಿಕ ಕೇಂದ್ರಗಳು, ಹೆಚ್ಚುವರಿ ಕ್ಯಾಂಪಸ್‌ಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದಿರಬಹುದು.

**7. ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು.**- ವಿಶ್ವವಿದ್ಯಾಲಯವು, ತನ್ನ ಭವಿಷ್ಯದ್‌ದೃಷ್ಟಿ ಮತ್ತು ಧ್ಯೇಯೋದ್ದೇಶಗಳನ್ನು ಸಾಧಿಸಲು ಈ ಮುಂದಿನ ವಿಸ್ತೃತ ಕಾರ್ಯತಂತ್ರಗಳನ್ನು ಕೈಗೊಳ್ಳಬಹುದು.-

(i) ಇಂಜಿನಿಯರಿಂಗ್, ವೈದ್ಯಕೀಯ, ಔಷಧಗಾರಿಕೆ, ವಿಜ್ಞಾನ, ಕಲೆ, ಸಮಾಜ ವಿಜ್ಞಾನ, ಕಂಪ್ಯೂಟರ್ ಅನ್ವಯಿಕಗಳು, ಮಾನವಿಕಗಳು ಮತ್ತು ವ್ಯವಸ್ಥಾಪನೆಯಂಥ ಕ್ಷೇತ್ರಗಳಲ್ಲಿಯ ವಿವಿಧ ವಿಷಯಗಳಲ್ಲಿ ಶಿಕ್ಷಣ, ಬೋಧನೆ, ತರಬೇತಿ, ಸಮಾಲೋಚನೆ, ಸಂಶೋಧನೆ ಮತ್ತು ಅಭಿವೃದ್ಧಿಗೆ ಅವಕಾಶವನ್ನು ಕಲ್ಪಿಸುವುದು ಹಾಗೂ ರಾಜ್ಯ ಸರ್ಕಾರದ ಪೂರ್ವಾನುಮೋದನೆ ಪಡೆದು ಈ ಕ್ಷೇತ್ರಗಳಲ್ಲಿ ಸಂಶೋಧನೆ ನಡೆಸಲು, ಪ್ರಗತಿಯನ್ನು ಸಾಧಿಸಲು ಮತ್ತು ಜ್ಞಾನವನ್ನು ಪ್ರಸಾರ ಮಾಡಲು ಮತ್ತು ಒಂದು ಸೊಸೈಟಿಯಾಗಿ ಅದು ಸೂಕ್ತವೆಂದು ಭಾವಿಸಬಹುದಾದಂಥ ಇತರ ಉದ್ದೇಶಗಳನ್ನು ಕಾರ್ಯಗತಗೊಳಿಸಲು ಉಪಬಂಧಗಳನ್ನು ಕಲ್ಪಿಸುವುದು;

(ii) ಕರ್ನಾಟಕದ ವಿವಿಧ ಸ್ಥಳಗಳಲ್ಲಿ, ಶಿಕ್ಷಣ ಕ್ಷೇತ್ರಗಳಲ್ಲಿನ ಮತ್ತು ಇತರ ಪದ್ಧತಿಗಳಲ್ಲಿನ ಬೋಧಕರಿಗಾಗಿ, ವೃತ್ತಿಪರರಿಗಾಗಿ ಹಾಗೂ ಆಡಳಿತಗಾರರಿಗಾಗಿ ಉನ್ನತ ಗುಣಮಟ್ಟದ ತರಬೇತಿ, ಸಾಮರ್ಥ್ಯ ನಿರ್ಮಾಣ ಮತ್ತು ಅಭಿವೃದ್ಧಿ ಪದ್ಧತಿಗಳನ್ನು ರೂಪಿಸುವುದು ಮತ್ತು ನೀಡುವುದು;

(iii) ಗುಣಮಟ್ಟದ ಶಿಕ್ಷಣಕ್ಕೆ ಕೊಡುಗೆಯನ್ನು ನೀಡುವುದಕ್ಕಾಗಿ ಕರ್ನಾಟಕದ ವಿವಿಧ ಸ್ಥಳಗಳಲ್ಲಿ ಸಂಪನ್ಮೂಲ ಕೇಂದ್ರಗಳನ್ನು ಅಭಿವೃದ್ಧಿ ಪಡಿಸುವುದು;

(iv) ವಿಶ್ವವಿದ್ಯಾಲಯ ಅನುದಾನ ಆಯೋಗದ ಗುಣಮಟ್ಟಗಳಿಗೆ ಅನುಸಾರವಾಗಿ ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ, ಕರ್ನಾಟಕದಲ್ಲಿನ ವಿವಿಧ ಸ್ಥಳಗಳಲ್ಲಿ ಕ್ಯಾಂಪಸ್ಸುಗಳನ್ನು ಸ್ಥಾಪಿಸುವುದು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದುವುದು ಮತ್ತು ಸಾಮಾಜಿಕ ಹಾಗೂ ಮಾನವ ಅಭಿವೃದ್ಧಿಯ ಬಗ್ಗೆ ಅರಿವನ್ನುಂಟು ಮಾಡುವುದು ಮತ್ತು ಆ ಬಗ್ಗೆ ಕೊಡುಗೆಯನ್ನು ನೀಡುವುದು.

(v) ನಿರ್ಧರಣೆಯ ವಿವಿಧ ನವೀನ ವಿಧಾನಗಳ ಮೂಲಕ ಮೌಲ್ಯಮಾಪನ ಮಾಡಿದ ಶೈಕ್ಷಣಿಕ ಕಾರ್ಯವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದುದರ ಆಧಾರದ ಮೇಲೆ ಪದವಿಗಳನ್ನು, ಡಿಪ್ಲೋಮೊಗಳನ್ನು, ಪ್ರಮಾಣಪತ್ರಗಳನ್ನು ಮತ್ತು ಯಶೋಪತ್ರ ಪ್ರದಾನದಂಥ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(vi) ವಿದ್ಯಾರ್ಥಿಗಳಿಗೆ, ಬೋಧಕ ಸದಸ್ಯರಿಗೆ ಮತ್ತು ಇತರರಿಗೆ ನಿರ್ದಿಷ್ಟ ಶೈಕ್ಷಣಿಕ ಮತ್ತು ಸಂಶೋಧನಾ ಕಾರ್ಯಕ್ರಮಗಳು, ತರಬೇತಿ ಕಾರ್ಯಕ್ರಮಗಳು ಮತ್ತು ವಿನಿಮಯ ಕಾರ್ಯಕ್ರಮಗಳನ್ನು ನೀಡಲು ಯಾವುವೇ ಇತರ ವಿಶ್ವವಿದ್ಯಾಲಯಗಳು ಸಂಶೋಧನಾ ಸಂಸ್ಥೆಗಳು, ಲಾಭರಹಿತ ಸಂಘಟನೆಗಳು, ಕೈಗಾರಿಕಾ ಸಂಘಗಳು, ವೃತ್ತಿಪರ ಸಂಘಗಳು ಅಥವಾ ಇತರ ಸಂಘಗಳೊಂದಿಗೆ ಸಹಯೋಗವನ್ನು ಕಲ್ಪಿಸುವುದು;

(vii) ವಿಚಾರ ಸಂಕಿರಣಗಳು, ಸಮ್ಮೇಳನಗಳು, ಕಾರ್ಯಾಂಗ ಶಿಕ್ಷಣ ಕಾರ್ಯಕ್ರಮಗಳು, ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳು, ಪ್ರಕಟಣೆಗಳು ಮತ್ತು ತರಬೇತಿ ಕಾರ್ಯಕ್ರಮಗಳು ಮತ್ತು

ಕಾರ್ಯಸೂಚಿಗಳ ಮೂಲಕ ಜ್ಞಾನ ಪ್ರಸಾರ ಮಾಡುವುದು ಮತ್ತು ಶಿಕ್ಷಣ ಮತ್ತು ತತ್ಸಂಬಂಧಿತ ಅಭಿವೃದ್ಧಿ ಕ್ಷೇತ್ರಗಳ ವಿಷಯಗಳ ಬಗ್ಗೆ ಸಾರ್ವಜನಿಕ ಚರ್ಚೆಯನ್ನು ಏರ್ಪಡಿಸುವುದು;

(viii) ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಇತರ ಯಾವುವೇ ಉತ್ತಮ ಗುಣಮಟ್ಟದ ಸಂಸ್ಥೆಗಳೊಂದಿಗೆ ಸಹಭಾಗಿಗಳಾಗಿ ವಿಶ್ವವಿದ್ಯಾಲಯದ ಬೋಧಕ ವೃಂದ (ಫ್ಯಾಕಲ್ಟಿ) ಮತ್ತು ಸಂಶೋಧಕರ ಅಭಿವೃದ್ಧಿ ಮತ್ತು ತರಬೇತಿಗಾಗಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು;

(ix) ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುದೇ ಸಂಸ್ಥೆಯೊಂದಿಗೆ ಜೊತೆಗೂಡಿ ಸಂಶೋಧನೆಯನ್ನು ಕೈಗೊಳ್ಳುವುದು ಮತ್ತು ಸಮರ್ಥನೆಗೊಳಿಸುವುದು.

(x) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದಕ್ಕಾಗಿ ಮತ್ತು ಉತ್ತೇಜಿಸುವುದಕ್ಕಾಗಿ ಅವಶ್ಯಕವಾದ ಮತ್ತು ಯುಕ್ತವಾದ ಕ್ರಮಗಳನ್ನು ಕೈಗೊಳ್ಳುವುದು;

(xi) ಭಾರತದಲ್ಲಿನ ಉನ್ನತ ಶಿಕ್ಷಣ ಮತ್ತು ಇತರ ಅಭಿವೃದ್ಧಿ ವಲಯಗಳನ್ನು ವಿಸ್ತರಿಸುವುದಕ್ಕಾಗಿ ಸರ್ಕಾರವು ಅನುಮೋದಿಸಬಹುದಾದಂಥ ಯಾವುವೇ ಧ್ಯೇಯೋದ್ದೇಶಗಳಲ್ಲಿ ತೊಡಗುವುದು.

**8. ವಿಶ್ವವಿದ್ಯಾಲಯದ ಅಧಿಕಾರಗಳು.–** ವಿಶ್ವವಿದ್ಯಾಲಯವು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗೆ ಅನುಸಾರವಾಗಿ ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿರ್ಧರಿಸಬಹುದಾದಂತೆ ಕ್ಯಾಂಪಸ್ಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಕರ್ನಾಟಕದಲ್ಲಿ ಸ್ಥಾಪಿಸುವುದು ಮತ್ತು ನಿರ್ವಹಿಸುವುದು;

(ii) ವಿಶ್ವವಿದ್ಯಾಲಯದ ಉದ್ದೇಶವನ್ನು ಕಾರ್ಯರೂಪಕ್ಕೆ ತರುವಲ್ಲಿ ಅಗತ್ಯವಾಗಬಹುದಾದ ಅಥವಾ ಕಾರ್ಯಸಾಧ್ಯವಾಗಬಹುದಾದ ಎಲ್ಲಾ ಅಂಥ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು;

(iii) ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಮತ್ತು ಷರತ್ತುಗಳಿಗೊಳಪಟ್ಟು ಪದವಿಗಳು ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರದಾನಮಾಡುವುದು;

(iv) ಪರಿನಿಯಮಗಳನ್ವಯ ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿ ವೇತನಗಳು ಮತ್ತು ಬಹುಮಾನಗಳು, ಅವಾರ್ಡುಗಳು, ಪಾರಿತೋಷಕಗಳು ಇತ್ಯಾದಿಗಳನ್ನು ಸ್ಥಾಪಿಸುವುದು ಮತ್ತು ನೀಡುವುದು;

(v) ಪರಿನಿಯಮಗಳಲ್ಲಿ ಅಥವಾ ಸಂದರ್ಭಾನುಸಾರವಾಗಿ ನಿಯಮಗಳಲ್ಲಿ ನಿಗದಿಪಡಿಸಬಹುದಾದ ಅಂಥ ಶುಲ್ಕಗಳನ್ನು, ಬಿಲ್ಲುಗಳನ್ನು, ಖರೀದಿ ಪಟ್ಟಿಗಳನ್ನು ಕೇಳಿಪಡೆದುಕೊಳ್ಳುವುದು ಮತ್ತು ಸ್ವೀಕರಿಸುವುದು ಹಾಗೂ ಚಾರ್ಜುಗಳನ್ನು ವಸೂಲು ಮಾಡುವುದು;

(vi) ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಪಠ್ಯೇತರ ಚಟುವಟಿಕೆಗಳಿಗೆ ಅವಕಾಶಗಳನ್ನು ಕಲ್ಪಿಸುವುದು;

(vii) ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಕ್ಯಾಂಪಸುಗಳ, ಪ್ರಾದೇಶಿಕ ಕೇಂದ್ರಗಳ, ಅಧ್ಯಯನ ಕೇಂದ್ರಗಳ ಭೋದಕ ಸಿಬ್ಬಂದಿ (ಫ್ಯಾಕಲ್ಟಿ), ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವುದು;

(viii) ವಿಶ್ವವಿದ್ಯಾಲಯದ ಅಥವಾ ಒಂದು ಘಟಕ ಕಾಲೇಜಿನ ಅಥವಾ ಕ್ಯಾಂಪಸ್ಸಿನ, ಪ್ರಾದೇಶಿಕ ಕೇಂದ್ರದ, ಅಧ್ಯಯನ ಕೇಂದ್ರದ ಉದ್ದೇಶಕ್ಕಾಗಿ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದಿರುವ, ಯಾವುದೇ ರೀತಿಯ ಸ್ವಯಂ ದೇಣಿಗೆಗಳು ಮತ್ತು ಕೊಡುಗೆಗಳನ್ನು ಸ್ವೀಕರಿಸುವುದು ಮತ್ತು ನ್ಯಾಸ ಮತ್ತು ದತ್ತಿ ಸ್ವತ್ತುಗಳೂ ಸೇರಿದಂತೆ, ಯಾವುದೇ ಚರ ಅಥವಾ ಸ್ಥಿರ ಸ್ವತ್ತನ್ನು ಆರ್ಜಿಸುವುದು, ಹೊಂದಿರುವುದು, ನಿರ್ವಹಿಸುವುದು, ನಡೆಸುವುದು ಮತ್ತು ಹಸ್ತಾಂತರ ಮಾಡುವುದು;

(ix) ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸುವುದು ಹಾಗೂ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ ವಿದ್ಯಾರ್ಥಿಗಳಿಗೆ ವಸತಿ ಸ್ಥಳಗಳನ್ನು ಗುರುತು ಮಾಡುವುದು;

L

(x) ವಸತಿಯ ಮೇಲ್ವಿಚಾರಣೆ ಮಾಡುವುದು ಮತ್ತು ನಿಯಂತ್ರಣ ಮಾಡುವುದು ಹಾಗೂ ವಿದ್ಯಾರ್ಥಿಗಳು ಮತ್ತು ಎಲ್ಲಾ ಪ್ರವರ್ಗಗಳ ಸಿಬ್ಬಂದಿಗಳಲ್ಲಿ ಶಿಸ್ತು ನಿಯಂತ್ರಣ ಮಾಡುವುದು ಮತ್ತು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ನಡತೆ ಸಂಹಿತೆಯನ್ನು ರೂಪಿಸುವುದೂ ಒಳಗೊಂಡಂತೆ ಅಂಥ ಸಿಬ್ಬಂದಿಗಳ ಸೇವಾಷರತ್ತುಗಳನ್ನು ನಿರೂಪಿಸುವುದು;

(xi) ಶೈಕ್ಷಣಿಕ, ಆಡಳಿತ ಮತ್ತು ಬೆಂಬಲ ಸಿಬ್ಬಂದಿಯ ಹುದ್ದೆಗಳನ್ನು ಮತ್ತು ಇತರ ಅವಶ್ಯಕ ಹುದ್ದೆಗಳನ್ನು ಸೃಜಿಸುವುದು;

(xii) ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನಿರ್ಧರಿಸಬಹುದಾದ ಅಂಥ ರೀತಿಯಲ್ಲಿ ಮತ್ತು ಅಂಥ ಉದ್ದೇಶಗಳಿಗಾಗಿ ಇತರ ವಿಶ್ವವಿದ್ಯಾಲಯಗಳೊಡನೆ ಸಹಕರಿಸುವುದು ಮತ್ತು ಸಹಯೋಗವನ್ನು ಹೊಂದುವುದು;

(xiii) ಶಿಕ್ಷಕರಿಗೆ, ಪಾಠಗಳನ್ನು ರಚಿಸುವವರಿಗೆ, ಮೌಲ್ಯಮಾಪಕರಿಗೆ ಮತ್ತು ಇತರ ಶೈಕ್ಷಣಿಕ ಸಿಬ್ಬಂದಿಗೆ ಪುನರ್ಮನನ ವ್ಯಾಸಂಗಕ್ರಮಗಳು, ಅಭಿಮುಖ ವ್ಯಾಸಂಗ ಕ್ರಮಗಳು, ಕಾರ್ಯಾಗಾರಗಳು, ವಿಚಾರಗೋಷ್ಠಿಗಳು ಮತ್ತು ಇತರ ಕಾರ್ಯಕ್ರಮಗಳನ್ನು ಏರ್ಪಡಿಸುವುದು ಮತ್ತು ನಡೆಸುವುದು;

(xiv) ಶೈಕ್ಷಣಿಕ ಪರಿಷತ್ತಿನ ಅನುಮೋದನೆಯೊಂದಿಗೆ ವಿಶ್ವವಿದ್ಯಾಲಯಕ್ಕೆ ಅಥವಾ ಘಟಕ ಕಾಲೇಜಿಗೆ, ಪ್ರಾದೇಶಿಕ ಕೇಂದ್ರಗಳಿಗೆ, ಅಧ್ಯಯನ ಕೇಂದ್ರಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮತ್ತು ಈ ಅಧಿನಿಯಮದಲ್ಲಿ ಕಲ್ಪಿಸಿದ ವ್ಯಾಪ್ತಿಗಿಂತ ಕಡಿಮೆಯಿಲ್ಲದಂತೆ ಕರ್ನಾಟಕದ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮಾನಕ ಗುಣಮಟ್ಟಗಳನ್ನು ನಿರ್ಧರಿಸುವುದು;

(xv) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಕಾರ್ಯರೂಪಕ್ಕೆ ತರಲು ಅವಶ್ಯವಾಗಬಹುದಾದಂಥ ಇತರ ಎಲ್ಲಾ ಕ್ರಮಗಳನ್ನು ಅಥವಾ ಕಾರ್ಯಗಳನ್ನು, ಅವು ಮೇಲೆ ಹೇಳಿದ ಅಧಿಕಾರಗಳಿಗೆ ಪ್ರಾಸಂಗಿಕವಾಗಿರಲಿ ಅಥವಾ ಇಲ್ಲದಿರಲಿ, ಕೈಗೊಳ್ಳುವುದು;

(xvi) ಪರೀಕ್ಷೆಗಳ ಆಧಾರದ ಮೇಲೆ ಅಥವಾ ಸರ್ಕಾರದಿಂದ ಅನುಮೋದಿತವಾದ ಇತರ ಯಾವುದೇ ಮೌಲ್ಯಮಾಪನ ವಿಧಾನದ ಆಧಾರದ ಮೇಲೆ ನೀಡಲು ಪದವಿಗಳು, ಡಿಪ್ಲೋಮಾಗಳು, ಪ್ರಮಾಣಪತ್ರಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಸ್ಥಾಪಿಸುವುದು;

(xvii) ಫಿಲಂಗಳು, ಕ್ಯಾಸೆಟ್‌ಗಳು, ಧ್ವನಿಸುರುಳಿಗಳು, ದೃಶ್ಯಸುರುಳಿಗಳು, ಸಿ.ಡಿ., ವಿ.ಸಿ.ಡಿ. ಮತ್ತು ಇತರ ತಂತ್ರಾಂಶಗಳೂ ಹಾಗೂ ಇತರ ಸಂಬಂಧಿತ ವಿದ್ಯುನ್ಮಾನ ಮತ್ತು ಮುದ್ರಣ ಮಾಧ್ಯಮವೂ ಸೇರಿದಂತೆ ಬೋಧಕ ಸಾಮಗ್ರಿಗಳನ್ನು ತಯಾರಿಸುವುದಕ್ಕಾಗಿ ಅವಕಾಶ ಕಲ್ಪಿಸುವುದು;

(xviii) ಪ್ರಬಂಧಕ ಮಂಡಳಿಯ ಅನುಮೋದನೆಯೊಡನೆ ವಿಶ್ವವಿದ್ಯಾಲಯದ ಉದ್ದೇಶಗಳಿಗಾಗಿ ವಿಶ್ವವಿದ್ಯಾಲಯದ ಸ್ವತ್ತುಗಳನ್ನು ಭದ್ರತೆಯಾಗಿ ನೀಡಿ ಅಥವಾ ನೀಡದೆ ಹಣವನ್ನು ಪಡೆಯುವುದು, ಸಂಗ್ರಹಿಸುವುದು, ಚಂದಾದಾರರಾಗುವುದು ಮತ್ತು ಸಾಲ ಪಡೆಯುವುದು;

(xix) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುವೇ ಇತರ ಶೈಕ್ಷಣಿಕ ಸಂಸ್ಥೆಗಳ ಆಡಳಿತವನ್ನು ಪಡೆದುಕೊಳ್ಳುವುದು, ವಹಿಸಿಕೊಳ್ಳುವುದು ಮತ್ತು ನಡೆಸುವುದು;

(xx) ಕಾರ್ಯನಿರ್ವಹಣಾ ಪರಿಷತ್ತಿನ ಪೂರ್ವಾನುಮೋದನೆಯೊಂದಿಗೆ ಸ್ವತ್ತುಗಳನ್ನು ಆರ್ಜಿಸುವುದು;

(xxi) ವಿಶ್ವವಿದ್ಯಾಲಯದ ಮೇಲಿನ ಉದ್ದೇಶಗಳಿಗೆ ಸಂಬಂಧಿಸಿದ ಅಥವಾ ಪ್ರಾಸಂಗಿಕವಾದ ಯಾವುದೇ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು.

**9. ವಿಶ್ವವಿದ್ಯಾಲಯವು ಎಲ್ಲಾ ವರ್ಗಗಳು, ಜಾತಿಗಳು, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲರಿಗೂ ಮುಕ್ತವಾಗಿರತಕ್ಕದ್ದು.-** ವಿಶ್ವವಿದ್ಯಾಲಯದ ಪ್ರವೇಶಗಳು ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲಾ ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು. ಎಲ್ಲಾ ಪ್ರವೇಶಗಳನ್ನು ಅರ್ಹತಾ ಪರೀಕ್ಷೆಗಳಲ್ಲಿನ ಅರ್ಹತೆಯ ಆಧಾರದ ಮೇಲೆ ಮಾಡತಕ್ಕದ್ದು:

ಪರಂತು, ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳ ಪ್ರವೇಶದಲ್ಲಿ ಶೇಕಡಾ ನಲವತ್ತರಷ್ಟನ್ನು ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ಮೀಸಲಿಡತಕ್ಕದ್ದು ಮತ್ತು ಪ್ರವೇಶಗಳನ್ನು ರಾಜ್ಯ ಸರ್ಕಾರವು ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡತಕ್ಕದ್ದು ಮತ್ತು ಸೀಟುಗಳನ್ನು ಅರ್ಹತೆ ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ರೂಪಿಸುವ ಮೀಸಲಾತಿ ನೀತಿಗೆ ಅನುಸಾರವಾಗಿ ಹಂಚಿಕೆ ಮಾಡತಕ್ಕದ್ದು:

ಮತ್ತು ಪರಂತು, ಯಾವುದೇ ಕೋರ್ಸಿನಲ್ಲಿ ಹತ್ತಕ್ಕಿಂತ ಕಡಿಮೆ ಸೀಟುಗಳು ಇರುವಲ್ಲಿ, ಸ್ನಾತಕೋತ್ತರ, ಇಂಥ ಕೋರ್ಸುಗಳನ್ನು ಒಟ್ಟಿಗೆ ಒಂದುಗೂಡಿಸುವ ಮೂಲಕ ಮೀಸಲಿಡತಕ್ಕದ್ದು ಮತ್ತು ಯಾವುದೇ ಕೋರ್ಸಿನಲ್ಲಿ ಮೂರು ಸೀಟುಗಳಿಗಿಂತ ಕಡಿಮೆ ಇರುವಲ್ಲಿ, ಅವುಗಳನ್ನು ಸುತ್ತು ಸರದಿಯಲ್ಲಿ ಮೀಸಲಿಡತಕ್ಕದ್ದು.

**10. ರಾಷ್ಟ್ರೀಯ ಅಧಿಮಾನ್ಯತೆ.–** ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಆದಷ್ಟು ಬೇಗನೆ ಸಂಬಂಧಪಟ್ಟ ಶಾಸನಾತ್ಮಕ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳಿಂದ ಅಧಿಮಾನ್ಯತೆಯನ್ನು ಕೋರತಕ್ಕದ್ದು. ಖಾಸಗಿ ವಿಶ್ವವಿದ್ಯಾಲಯಗಳು ನಡೆಸುವ ಎಲ್ಲಾ ಕೋರ್ಸುಗಳು ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಯ ವಿನಿಯಮಗಳಿಗನುಸಾರವಾಗಿರತಕ್ಕದ್ದು.

**11. ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು.–** ಪ್ರಾಯೋಜಕ ಸಂಸ್ಥೆಯು ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದಂತೆ ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು. ಇವುಗಳಲ್ಲಿ ಪ್ರತಿಯೊಂದನ್ನು ಈ ಅಧಿನಿಯಮದಲ್ಲಿ ಉಪಬಂಧಿಸಲಾದಂತೆ ಪ್ರಾಯೋಜಕ ಸಂಸ್ಥೆಯು ಚಲಾಯಿಸಬಹುದು, ಎಂದರೆ:–

(i) ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಪುನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(ii) ಸಹ–ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಪುನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(iii) ವಿಶ್ವವಿದ್ಯಾಲಯದ ಪ್ರಥಮ ಪ್ರಬಂಧಕ ಮಂಡಳಿಯನ್ನು ರಚಿಸುವುದು;

(iv) ಪ್ರಬಂಧಕ ಮಂಡಳಿಯ ಅಧ್ಯಕ್ಷರನ್ನು ನಾಮನಿರ್ದೇಶಿಸುವುದು;

(v) ಪ್ರಬಂಧಕ ಮಂಡಳಿಯ ಸದಸ್ಯರಾಗಿ ಮೂವರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(vi) ಕಾರ್ಯನಿರ್ವಹಣಾ ಪರಿಷತ್ತಿನ ಸದಸ್ಯರಾಗಿ ಇಬ್ಬರು ವ್ಯಕ್ತಿಗಳನ್ನು ನಾಮ ನಿರ್ದೇಶಿಸುವುದು;

(vii) ವಿಶ್ವವಿದ್ಯಾಲಯದ ದತ್ತಿ ನಿಧಿಗೆ ದೇಣಿಗೆ ನೀಡಲು ನಿಧಿ ಮೂಲಗಳನ್ನು ನಿರ್ಧರಿಸುವುದು;

(viii) ವಿಶ್ವವಿದ್ಯಾಲಯದ ಹಣದ ವಿನಿಯೋಗ ಮತ್ತು ವೆಚ್ಚ ಮಾಡುವುದನ್ನು ನಿರ್ಧರಿಸುವುದು;

(ix) ಪ್ರಬಂಧಕ ಮಂಡಳಿಯ ಸಭೆಯಲ್ಲಿಯ ಯಾವುವೇ ವಿವಾದಗಳನ್ನು ಈ ಅಧಿನಿಯಮದಲ್ಲಿ ಉಪಬಂಧಿಸಿರುವ ವಿಧಾನದಲ್ಲಿ ಬಗೆಹರಿಸುವುದು;

## ಅಧ್ಯಾಯ – III

## ವಿಶ್ವವಿದ್ಯಾಲಯದ ಅಧಿಕಾರಿಗಳು

**12. ವಿಶ್ವವಿದ್ಯಾಲಯದ ಅಧಿಕಾರಿಗಳು.–** ಈ ಮುಂದಿನವರು ವಿಶ್ವವಿದ್ಯಾಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:–

(i) ಸಂದರ್ಶಕರು;

(ii) ಸಹ–ಸಂದರ್ಶಕರು;

(iii) ಕುಲಾಧಿಪತಿಗಳು;

(iv) ಸಹ–ಕುಲಾಧಿಪತಿಗಳು;

(v) ಕುಲಪತಿಗಳು;

(vi) ಸಹ–ಕುಲಪತಿಗಳು;

(vii) ಕುಲಸಚಿವರು;

(viii) ಹಣಕಾಸು ಅಧಿಕಾರಿ; ಮತ್ತು

(ix) ಪರಿನಿಯಮಗಳ ಮೂಲಕ ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಘೋಷಿಸಬಹುದಾದ ಅಂಥ ಇತರ ಅಧಿಕಾರಿಗಳು.

**13. ಸಂದರ್ಶಕರು.–** (1) ಕರ್ನಾಟಕದ ಘನತೆವೆತ್ತ ರಾಜ್ಯಪಾಲರು ವಿಶ್ವವಿದ್ಯಾಲಯದ ಸಂದರ್ಶಕರಾಗಿರತಕ್ಕದ್ದು ಮತ್ತು ಸಂದರ್ಶಕರು ವಿಶ್ವವಿದ್ಯಾಲಯದ ಕಾರ್ಯನಿರ್ವಹಣೆಯ ಸುಧಾರಣೆಗಾಗಿ ಸಲಹೆಗಳನ್ನು ನೀಡಬಹುದು.

(2) ಸಂದರ್ಶಕರು, ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಸಂದರ್ಶಕರು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ವ್ಯವಹಾರಗಳಿಗೆ ಸಂಬಂಧಿಸಿದಂತೆ, ಯಾವುದೇ ಪತ್ರ ಅಥವಾ ಮಾಹಿತಿಯನ್ನು ತರಿಸಿಕೊಳ್ಳುವುದು;

(ii) ಸಂದರ್ಶಕರು, ಅವರು ಸ್ವೀಕರಿಸಿದ ಮಾಹಿತಿಯ ಆಧಾರದ ಮೇಲೆ ವಿಶ್ವವಿದ್ಯಾಲಯಗಳ ಯಾವುದೇ ಪ್ರಾಧಿಕಾರವು ಮಾಡಿದ ಯಾವುದೇ ಆದೇಶ, ನಡೆಸಿದ ವ್ಯವಹರಣೆಗಳು ಅಥವಾ ಕೈಗೊಂಡ ತೀರ್ಮಾನಗಳು, ಈ ಅಧಿನಿಯಮಕ್ಕೆ, ವಿನಿಯಮಗಳಿಗೆ ಅಥವಾ ನಿಯಮಗಳಿಗೆ ಪೂರಕವಾಗಿಲ್ಲವೆಂದು ಮನಗಂಡರೆ ಅವರು ವಿಶ್ವವಿದ್ಯಾಲಯದ ಹಿತಾಸಕ್ತಿಯಿಂದ ತಾವು ಸೂಕ್ತವೆಂದು ಭಾವಿಸಬಹುದಾದ ಅಂಥ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಹಾಗೆ ಹೊರಡಿಸಿದ ನಿರ್ದೇಶನಗಳನ್ನು ಸಂಬಂಧಪಟ್ಟವರೆಲ್ಲರೂ ಪಾಲಿಸತಕ್ಕದ್ದು.

**14. ಸಹ–ಸಂದರ್ಶಕರು.–** (1) ಕರ್ನಾಟಕ ಸರ್ಕಾರದ ಮಾನ್ಯ ಉನ್ನತ ಶಿಕ್ಷಣ ಸಚಿವರು ವಿಶ್ವವಿದ್ಯಾಲಯದ ಸಹ–ಸಂದರ್ಶಕರಾಗಿರತಕ್ಕದ್ದು.

(2) ಸಂದರ್ಶಕರ ಅನುಪಸ್ಥಿತಿಯಲ್ಲಿ ಸಹ–ಸಂದರ್ಶಕರು ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**15. ಕುಲಾಧಿಪತಿಗಳು.–** (1) ಕುಲಾಧಿಪತಿಯವರನ್ನು ಪ್ರಾಯೋಜಕ ಸಂಸ್ಥೆಯು ನೇಮಿಸತಕ್ಕದ್ದು.

(2) ಪ್ರಾಯೋಜಕ ಸಂಸ್ಥೆಯ ಹಾಲಿ ಮುಖ್ಯಸ್ಥರು ಮೊದಲನೇ ಕುಲಾಧಿಪತಿಗಳಾಗಿರತಕ್ಕದ್ದು, ಅವರು ತಮ್ಮ ಜೀವನಪರ್ಯಂತ ಅಥವಾ ಅವರು ತಮ್ಮ ಪದವನ್ನು ಬಿಟ್ಟುಕೊಡುವವರೆಗೆ ಪದಧಾರಣ ಮಾಡಿರತಕ್ಕದ್ದು.

(3) ತದನಂತರದ ಕುಲಾಧಿಪತಿಗಳು, ಅಂಥ ನೇಮಕಾತಿಯನ್ನು ಪರಿಗಣಿಸುವ ಸಂದರ್ಭದಲ್ಲಿ ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ, ಪ್ರಾಯೋಜಕ ಸಂಸ್ಥೆಯ ಸದಸ್ಯನಾಗಿರತಕ್ಕದ್ದು ಅಥವಾ ಶಿಕ್ಷಣ, ವಿಜ್ಞಾನ, ಸಂಸ್ಕೃತಿ ಅಥವಾ ಸಾರ್ವಜನಿಕ ಜೀವನ ಕ್ಷೇತ್ರಗಳಲ್ಲಿ ರಾಷ್ಟ್ರೀಯ ಮಟ್ಟದ ಛಾಪನ್ನು ಪಡೆದಿರುವ ಅಂಥ ಇತರ ವ್ಯಕ್ತಿಯಾಗಿರತಕ್ಕದ್ದು.

(4) ಹಾಗೆ ನೇಮಕಗೊಂಡ ತದನಂತರದ ಕುಲಾಧಿಪತಿಗಳು ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ಪದಧಾರಣ ಮಾಡತಕ್ಕದ್ದು.

(5) ಕುಲಾಧಿಪತಿಗಳು ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳ ಅಡಿಯಲ್ಲಿ ಅವರಿಗೆ ಪ್ರದಾನ ಮಾಡಬಹುದಾದ ಅಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು, ಅವುಗಳಲ್ಲಿ ಈ ಮುಂದಿನ ಅಧಿಕಾರಗಳು ಒಳಗೊಂಡಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುವುದು;

(ii) ಸಂದರ್ಶಕರ ಮತ್ತು ಸಹ–ಸಂದರ್ಶಕರಿಬ್ಬರ ಗೈರುಹಾಜರಿಯಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಘಟಿಕೋತ್ಸವಗಳಲ್ಲಿ ಅಧ್ಯಕ್ಷತೆಯನ್ನು ವಹಿಸುವುದು;

(iii) ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವುದು;

(iv) ಈ ಅಧಿನಿಯಮ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಅನುಸಾರವಾಗಿ ಕುಲಪತಿಗಳನ್ನು ನೇಮಿಸುವುದು ಅಥವಾ ಪುನರ್ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(v) ಈ ಅಧಿನಿಯಮದ 16ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ನಾಮನಿರ್ದೇಶಕ ಸಮಿತಿಯ ಸದಸ್ಯರಾಗಿ ಒಬ್ಬ ವ್ಯಕ್ತಿಯನ್ನು ನಾಮನಿರ್ದೇಶನ ಮಾಡುವುದು;

(vi) ಸಹಕುಲಪತಿಗಳ, ಡೀನ್‌ರವರ, ಕುಲಸಚಿವರ ಹಾಗೂ ಹಣಕಾಸು ಅಧಿಕಾರಿಗಳ ನೇಮಕಾತಿಯನ್ನು ಪೂರ್ವಾನುಮೋದಿಸುವುದು;

(vii) ಪ್ರಬಂಧಕ ಮಂಡಳಿಯ ಸದಸ್ಯರನ್ನಾಗಿ ಇಬ್ಬರು ಶಿಕ್ಷಣ ತಜ್ಞರನ್ನು ನಾಮನಿರ್ದೇಶಿಸುವುದು;

(viii) ಮೊದಲ ಸಹ-ಕುಲಪತಿಗಳು ಮತ್ತು ಹಣಕಾಸು ಅಧಿಕಾರಿಗಳನ್ನು ನೇಮಿಸುವುದು;

(ix) ಮೊದಲ ಕಾರ್ಯನಿರ್ವಾಹಣಾ ಪರಿಷತ್ತು, ಹಣಕಾಸು ಸಮಿತಿ, ಸಂಶೋಧನಾ ಪರಿಷತ್ತು ಹಾಗೂ ಶೈಕ್ಷಣಿಕ ಪರಿಷತ್ತುಗಳನ್ನು ರಚಿಸುವುದು;

(x) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ ಕಾರ್ಯಸೂಚಿ ವಿಷಯಗಳನ್ನು ಪೂರ್ವಾನುಮೋದಿಸುವುದು;

(xi) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ (ಪ್ರಬಂಧಕ ಮಂಡಳಿಯ ಸಭೆಯಲ್ಲಿ ಉಂಟಾದ ವಿವಾದಗಳನ್ನು ಹೊರತುಪಡಿಸಿ) ವಿವಾದಗಳನ್ನು ಪರಿಹರಿಸುವುದು.

(6) ಪದಾಧಿಕಾರಿ ಅಥವಾ ಸಂಸ್ಥೆ ಮತ್ತು ವಿಶ್ವವಿದ್ಯಾಲಯದ ಯಾವುದೇ ಇತರ ಪದಾಧಿಕಾರಿ ಅಥವಾ ಸಂಸ್ಥೆಗಳ ನಡುವೆ ವಿವಾದಗಳು ಉಂಟಾದಲ್ಲಿ, ಆ ವಿವಾದವನ್ನು ಕುಲಾಧಿಪತಿಯವರ ಪರ್ಯಾಲೋಚನೆಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿವಾದದ ಸಂದರ್ಭದಲ್ಲಿ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**16. ಸಹ-ಕುಲಾಧಿಪತಿಗಳು.–** ಕುಲಾಧಿಪತಿಯವರು, ಪರಿನಿಯಮಗಳಲ್ಲಿ ಹೇಳಲಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಸಹ-ಕುಲಾಧಿಪತಿಗಳನ್ನು ನೇಮಕ ಮಾಡತಕ್ಕದ್ದು. ಸಹ-ಕುಲಾಧಿಪತಿಗಳು, ಕುಲಾಧಿಪತಿಗಳು ಅಗತ್ಯಪಡಿಸಿದ ಅಂಥ ಎಲ್ಲಾ ವಿಷಯಗಳಲ್ಲಿ ಕುಲಾಧಿಪತಿಗಳಿಗೆ ನೆರವು ನೀಡತಕ್ಕದ್ದು. ಸಹ-ಕುಲಾಧಿಪತಿಗಳ ಪಾತ್ರ ಮತ್ತು ಹೊಣೆಗಾರಿಕೆಗಳನ್ನು ಪರಿನಿಯಮಗಳ ಮೂಲಕ ಹೇಳತಕ್ಕದ್ದು.

**17. ಕುಲಪತಿಗಳು.–** (1) (2)ನೇ ಉಪಪ್ರಕರಣದ ಉಪಬಂಧಗಳಿಗೆ ಅನುಸಾರವಾಗಿ ನಾಮನಿರ್ದೇಶಕ ಸಮಿತಿಯು ಶಿಫಾರಸ್ಸು ಮಾಡಿದ ಮೂವರು ವ್ಯಕ್ತಿಗಳ ಪೈಕಿಯಿಂದ ಒಬ್ಬರನ್ನು ಮೂರು ವರ್ಷಗಳ ಅವಧಿಗಾಗಿ ಕುಲಪತಿಗಳನ್ನಾಗಿ, ಪರಿನಿಯಮಗಳಲ್ಲಿ ನಿಯಮಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರು ನೇಮಿಸತಕ್ಕದ್ದು. ಮೂರು ವರ್ಷಗಳ ಅವಧಿಯು ಮುಗಿದ ತರುವಾಯ, ಇದನ್ನು ಮೂರು ವರ್ಷಗಳ ಮತ್ತೊಂದು ಅವಧಿಗೆ ನವೀಕರಿಸಬಹುದು:

ಪರಂತು, ಕುಲಪತಿಯವರು, ತಮ್ಮ ಅವಧಿ ಮುಗಿದ ನಂತರವೂ ಹೊಸ ಕುಲಪತಿಯವರು ಸೇರಿಕೊಳ್ಳುವವರೆಗೆ ಪದದಲ್ಲಿ ಮುಂದುವರೆಯತಕ್ಕದ್ದು. ಆದಾಗ್ಯೂ ಈ ಅವಧಿಯು ಯಾವುದೇ ಸಂದರ್ಭದಲ್ಲಿ ಒಂದು ವರ್ಷವನ್ನು ಮೀರತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಹೇಳಿರುವ ನಾಮನಿರ್ದೇಶಕ ಸಮಿತಿಯಲ್ಲಿ ಈ ಮುಂದಿನ ವ್ಯಕ್ತಿಗಳು ಇರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು ನಾಮನಿರ್ದೇಶಿಸಿದ ಒಬ್ಬ ವ್ಯಕ್ತಿ;

(ii) ಪ್ರಬಂಧಕ ಮಂಡಳಿಯ ಇಬ್ಬರು ನಾಮ ನಿರ್ದೇಶಿತರು, ಇವರಲ್ಲಿ ಒಬ್ಬರನ್ನು ಪ್ರಬಂಧಕ ಮಂಡಳಿಯು ಸಮಿತಿಯ ಸಂಚಾಲಕರೆಂದು ನಾಮನಿರ್ದೇಶಿಸತಕ್ಕದ್ದು.

(3) ಶೋಧನಾ ಸಮಿತಿಯು, ಅರ್ಹತೆಯ ಆಧಾರದ ಮೇಲೆ ಕುಲಪತಿಯ ಹುದ್ದೆಗೆ ಸೂಕ್ತವಾದ ಮೂವರು ವ್ಯಕ್ತಿಗಳ ಹೆಸರನ್ನು ಶಿಫಾರಸ್ಸು ಮಾಡತಕ್ಕದ್ದು ಮತ್ತು ಅದನ್ನು ಪ್ರತಿಯೊಬ್ಬ ವ್ಯಕ್ತಿಯ ವಿದ್ಯಾರ್ಹತೆ ಮತ್ತಿತರ ವಿಶಿಷ್ಟ ಪ್ರಶಸ್ತಿಗಳನ್ನು ತಿಳಿಸುವ ಒಂದು ಸಂಕ್ಷಿಪ್ತ ವರದಿಯೊಂದಿಗೆ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು.

6

(4) ಕುಲಪತಿಯವರು ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಹಣಾ ಮತ್ತು ಶೈಕ್ಷಣಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣವನ್ನು ಚಲಾಯಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯದ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೊಳಿಸತಕ್ಕದ್ದು:

ಪರಂತು, ಶಿಕ್ಷಕರ ನೇಮಕಾತಿಯನ್ನು ಹೊರತುಪಡಿಸಿ, ಕೂಡಲೇ ಕ್ರಮವನ್ನು ಕೈಗೊಳ್ಳಬೇಕಾದ ತುರ್ತು ಸ್ವರೂಪದ ಯಾವುದೇ ಇತರ ವಿಷಯಗಳಲ್ಲಿ ಮತ್ತು ಅದನ್ನು ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ವಿಶ್ವವಿದ್ಯಾಲಯವು ಇದಕ್ಕಾಗಿ ಅಧಿಕೃತಗೊಳಿಸಿದ್ದ ಯಾವೊಬ್ಬ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ಇತರ ಸಂಸ್ಥೆಯು ಕೂಡಲೇ ಕ್ರಮಕೈಗೊಳ್ಳುವುದು ಸಾಧ್ಯವಿರದಿರುವಾಗ ಕುಲಪತಿಯವರು, ತಾನು ಸೂಕ್ತವೆಂದು ಭಾವಿಸಬಹುದಾದಂತಹ ಕ್ರಮವನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆದು ಕೈಗೊಳ್ಳತಕ್ಕದ್ದು.

(5) ಕುಲಪತಿಯವರು ಪರಿನಿಯಮಗಳು ಅಥವಾ ನಿಯಮಗಳಲ್ಲಿ ಹೇಳಲಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು:

ಪರಂತು, ಕುಲಪತಿಗಳ ಅಭಿಪ್ರಾಯದಲ್ಲಿ, ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಯಾವುದೇ ನಿರ್ಣಯವು, ಈ ಅಧಿನಿಯಮ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳು, ವಿನಿಯಮಗಳು ಅಥವಾ ನಿಯಮಗಳ ಮೂಲಕ ಪ್ರದತ್ತವಾದ ಅಧಿಕಾರದ ಹೊರಗಿದ್ದರೆ ಅಥವಾ ವಿಶ್ವವಿದ್ಯಾಲಯದ ಹಿತಾಸಕ್ತಿಗೆ ಪ್ರತಿಕೂಲವಾಗಬಹುದಾಗಿದ್ದರೆ, ಅದರ ನಿರ್ಣಯದ ದಿನಾಂಕದಿಂದ ಹದಿನೈದು ದಿನಗಳ ಒಳಗೆ ತನ್ನ ನಿರ್ಣಯವನ್ನು ಪರಿಷ್ಕರಿಸಲು ಸಂಬಂಧಪಟ್ಟ ಪ್ರಾಧಿಕಾರವನ್ನು ಆತನು ಕೋರತಕ್ಕದ್ದು ಮತ್ತು ಪ್ರಾಧಿಕಾರವು ಅಂಥ ನಿರ್ಣಯವನ್ನು ಸಂಪೂರ್ಣವಾಗಿ ಅಥವಾ ಭಾಗಶ:ವಾಗಿ ಪರಿಷ್ಕರಿಸಲು ನಿರಾಕರಿಸಿದ ಸಂದರ್ಭದಲ್ಲಿ ಅಥವಾ ಹದಿನೈದು ದಿನಗಳೊಳಗೆ ಯಾವುದೇ ನಿರ್ಣಯವನ್ನು ತೆಗೆದುಕೊಳ್ಳಲು ವಿಫಲವಾದಲ್ಲಿ, ನಂತರ ಅಂಥ ವಿಷಯವನ್ನು ಕುಲಾಧಿಪತಿಗಳಿಗೆ ಕಳುಹಿಸತಕ್ಕದ್ದು ಮತ್ತು ಈ ಬಗ್ಗೆ ಇವರ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

(6) ಕುಲಪತಿಯವರ ಸೇವೆಗಳನ್ನು, ಪ್ರಬಂಧಕ ಮಂಡಳಿಯ ಅನುಮೋದನೆಯೊಂದಿಗೆ ಮತ್ತು ಸಹಜ ನ್ಯಾಯದ ತತ್ವಗಳನ್ನು ಅನುಸರಿಸಿದ ನಂತರ ಹಾಗೂ ಶಿಸ್ತಿನ ಆಧಾರದ ಮೇಲೆ ಅಂತ್ಯಗೊಳಿಸುವ ಸಂದರ್ಭವೂ ಸೇರಿದಂತೆ, ಪ್ರಕರಣದ ಬಗ್ಗೆ ಕುಲಪತಿಯು ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡಿದ ತರುವಾಯ, ಕುಲಾಧಿಪತಿಯವರು ಅಂತ್ಯಗೊಳಿಸಬಹುದು.

(7) ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಸಂದರ್ಶಕರು, ಸಹ–ಸಂದರ್ಶಕರು ಕುಲಾಧಿಪತಿಯವರು ಮತ್ತು ಸಹ–ಕುಲಾಧಿಪತಿಯವರು ಇವರುಗಳ ಗೈರು ಹಾಜರಿಯ ಸಂದರ್ಭದಲ್ಲಿ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**18. ಸಹ–ಕುಲಪತಿಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಮೂರು ಜನರನ್ನು ಮೀರದಂತೆ ಸಹ–ಕುಲಪತಿಗಳನ್ನು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**19. ವ್ಯಾಸಂಗ ವಿಭಾಗಗಳ ಡೀನ್‌ಗಳು.–** ಕುಲಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವ್ಯಾಸಂಗ ವಿಭಾಗಗಳ ಡೀನ್‌ಗಳನ್ನು ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**20. ಕುಲಸಚಿವರು.–** (1) ಕುಲಾಧಿಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಸಚಿವರನ್ನು ನೇಮಕ ಮಾಡತಕ್ಕದ್ದು.

(2) ಪರಿನಿಯಮಗಳಲ್ಲಿ ಪರಿಭಾಷಿಸಿರುವಂಥ ಎಲ್ಲಾ ಕರಾರುಗಳನ್ನು ವಿಶ್ವವಿದ್ಯಾಲಯದ ಪರವಾಗಿ ಕುಲಸಚಿವರು ಮಾಡಿಕೊಳ್ಳತಕ್ಕದ್ದು ಮತ್ತು ಅದಕ್ಕೆ ಸಹಿ ಹಾಕತಕ್ಕದ್ದು.

(3) ಕುಲಸಚಿವರು ವಿಶ್ವವಿದ್ಯಾಲಯದ ಪರವಾಗಿ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಪರಿನಿಯಮಗಳಿಂದ ಪ್ರದತ್ತಗೊಳಿಸಬಹುದಾದಂಥ ಅಥವಾ ಕುಲಾಧಿಪತಿಯವರು ಮತ್ತು ಕುಲಪತಿಯವರು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು ವಿಶ್ವವಿದ್ಯಾಲಯದ ದಾಖಲೆಗಳು ಮತ್ತು ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು, ಕುಲಪತಿಯವರು ಅಥವಾ

ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಅಂಥ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿತಕ್ಕದ್ದು.

**21. ಹಣಕಾಸು ಅಧಿಕಾರಿ.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು, ಪರಿನಿಯಮಗಳ ಮೂಲಕ ಪ್ರದತ್ತಗೊಳಿಸಬಹುದಾದ ಅಂಥ ವಿಧಾನದಲ್ಲಿ ಹಣಕಾಸು ಅಧಿಕಾರಿಯನ್ನು ನೇಮಕ ಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**22. ಇತರ ಅಧಿಕಾರಿಗಳು.–** ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ ನೇಮಕಾತಿಯ ವಿಧಾನ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಕರ್ತವ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ – IV

## ವಿಶ್ವವಿದ್ಯಾಲಯದ ಪ್ರಾಧಿಕಾರಗಳು

**23. ವಿಶ್ವವಿದ್ಯಾಲಯದ ಪ್ರಾಧಿಕಾರಗಳು.–** ಈ ಮುಂದಿನವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:–

(i) ಪ್ರಬಂಧಕ ಮಂಡಳಿ;

(ii) ಕಾರ್ಯನಿರ್ವಹಣಾ ಪರಿಷತ್ತು;

(iii) ಶೈಕ್ಷಣಿಕ ಪರಿಷತ್ತು;

(iv) ಸಂಶೋಧನಾ ಪರಿಷತ್ತು;

(v) ಹಣಕಾಸು ಪರಿಷತ್ತು; ಮತ್ತು

(vi) ವಿಶ್ವವಿದ್ಯಾಲಯದ ಪ್ರಾಧಿಕಾರಗಳೆಂದು ಪರಿನಿಯಮಗಳ ಮೂಲಕ ಘೋಷಿಸಬಹುದಾದ ಅಂಥ ಇತರ ಪ್ರಾಧಿಕಾರಗಳು.

**24. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು.–** (1) ಪ್ರಬಂಧಕ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು – ಅಧ್ಯಕ್ಷರು;

(ii) ಕುಲಪತಿಯವರು – ಸದಸ್ಯರು;

(iii) ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(iv) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(v) ರಾಜ್ಯ ಸರ್ಕಾರವು ನಾಮ ನಿರ್ದೇಶನ ಮಾಡಿದ ಆಡಳಿತವನ್ನು ಒಳಗೊಂಡಂತೆ ವ್ಯವಸ್ಥಾಪನೆ, ಹಣಕಾಸು ಅಥವಾ ಯಾವುದೇ ಇತರ ವಿಶೇಷ ಕ್ಷೇತ್ರದಲ್ಲಿನ ಒಬ್ಬರು ತಜ್ಞರು;

(vi) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಇಬ್ಬರು ವ್ಯಕ್ತಿಗಳು ಅವರ ಪೈಕಿ ಒಬ್ಬರು ಮಹಿಳೆಯಾಗಿರತಕ್ಕದ್ದು;

(vii) ಸಹ ಕುಲಪತಿಯವರು ಮತದಾನದ ಹಕ್ಕಿಲ್ಲದ ಸದಸ್ಯರಾಗಿರತಕ್ಕದ್ದು;

(viii) ವಿಶ್ವವಿದ್ಯಾಲಯ ಅನುದಾನ ಆಯೋಗದ ನಾಮನಿರ್ದೇಶಿತ ಒಬ್ಬ ಸುಪ್ರಸಿದ್ಧ ಶಿಕ್ಷಣ ತಜ್ಞರು.

(2) ಕುಲಸಚಿವರು ಪ್ರಬಂಧಕ ಮಂಡಳಿಯ ಮತ ದಾನದ ಹಕ್ಕಿರದ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ಪ್ರಬಂಧಕ ಮಂಡಳಿಯ ಸದಸ್ಯರ ಪದಾವಧಿ, ಸರ್ಕಾರದಿಂದ ನಾಮನಿರ್ದೇಶಿತರಾದ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ನೇಮಕಾತಿ, ನವೀಕರಣ ಮತ್ತು ತೆಗೆದುಹಾಕುವುದು ಮುಂತಾದವುಗಳು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಾಧಿಪತಿಯವರು ಯಾವಾಗಲೂ ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರ ಗೈರುಹಾಜರಿಯಲ್ಲಿ ಕುಲಾಧಿಪತಿಯವರಿಂದ ನಾಮನಿರ್ದೇಶಿತರಾದ ಯಾರಾದರೂ ಒಬ್ಬರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು. ಅಂಥ ಸಭೆಯ ಅಧ್ಯಕ್ಷತೆಯನ್ನು ವಹಿಸುವುದಕ್ಕೆ ಕುಲಾಧಿಪತಿಯವರು ಯಾವೊಬ್ಬ ವ್ಯಕ್ತಿಯನ್ನೂ ನಾಮನಿರ್ದೇಶನ ಮಾಡಿರದಿದ್ದಲ್ಲಿ, ಸಭೆಯಲ್ಲಿ ಹಾಜರಿರುವ ಸದಸ್ಯರು ಸರಳ ಬಹುಮತದ ಮೂಲಕ ಅವರುಗಳ ಪೈಕಿಯಿಂದಲೇ ಆ ಸಭೆಯ ಅಧ್ಯಕ್ಷನನ್ನು ಚುನಾಯಿಸತಕ್ಕದ್ದು.

(5) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಿಗೆ, ಅಂಥ ಸಭೆಯಲ್ಲಿ ಹಾಜರಿದ್ದು ಮತ ನೀಡುವ ಮೂರು ಜನ ಸದಸ್ಯರು ಗಣಪೂರ್ತಿ (ಕೋರಂ) ಆಗಿರತಕ್ಕದ್ದು:

ಪರಂತು, ಪ್ರಬಂಧಕ ಮಂಡಳಿಯ ಯಾವುದೇ ಸಭೆಯ ಕೋರಂ ಪೂರ್ಣವಾಗಬೇಕಾದರೆ ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಿರುವುದು ಮತ್ತು ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಾಗದೇ ಇದ್ದಾಗ ಕುಲಪತಿಯವರು ಹಾಜರಿರುವುದು ಯಾವಾಗಲೂ ಅವಶ್ಯವಾಗಿರತಕ್ಕದ್ದು.

(6) ಪ್ರಬಂಧಕ ಮಂಡಳಿಯು ವಿಶ್ವವಿದ್ಯಾಲಯದ ಪ್ರಧಾನ ಪ್ರಬಂಧಕ ಸಂಸ್ಥೆಯಾಗಿರತಕ್ಕದ್ದು ಮತ್ತು ಅದು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಕಗೊಳಿಸುವುದು;

(ii) ವಿಶ್ವವಿದ್ಯಾಲಯವು ಅನುಸರಿಸಬೇಕಾದ ಕಾರ್ಯನೀತಿಗಳನ್ನು ರಚಿಸುವುದು;

(iii) ಈ ಅಧಿನಿಯಮದ ಅಥವಾ ಪರಿನಿಯಮಗಳ ಅಥವಾ ನಿಯಮಗಳ ಉಪಬಂಧಗಳಿಗೆ ಅನುಗುಣವಾಗಿ ಇರದ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ತೀರ್ಮಾನಗಳನ್ನು ಪುನರೀಕ್ಷಿಸುವುದು;

(iv) ವಿಶ್ವವಿದ್ಯಾಲಯದ ಆಯವ್ಯಯ ಮತ್ತು ವಾರ್ಷಿಕ ವರದಿಗಳನ್ನು ಅನುಮೋದಿಸುವುದು;

(v) ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸುವುದು ಅಥವಾ ಈಗಾಗಲೇ ಇರುವ ಪರಿನಿಯಮಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವುದು ಅಥವಾ ನಿರಸನಗೊಳಿಸುವುದು;

(vi) ವಿಶ್ವವಿದ್ಯಾಲಯವನ್ನು ಸ್ವಯಂಸಮಾಪನಗೊಳಿಸುವ ನಿರ್ಧಾರವನ್ನು ತೆಗೆದುಕೊಳ್ಳುವುದು;

(vii) ಸರ್ಕಾರಕ್ಕೆ ಸಲ್ಲಿಸುವ ಪ್ರಸ್ತಾವಗಳನ್ನು ಅನುಮೋದಿಸುವುದು;

(viii) ಶುಲ್ಕ ನಿಯಂತ್ರಣ ಸಮಿತಿಗೆ ಮೂವರು ಸದಸ್ಯರನ್ನು ನಾಮನಿರ್ದೇಶನ ಮಾಡುವುದು;

(ix) ವಿಶ್ವವಿದ್ಯಾಲಯದ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕೆ ಅಪೇಕ್ಷಣೀಯವೆಂದು ಕಂಡುಬರುವಂಥ ತೀರ್ಮಾನಗಳನ್ನು ಮತ್ತು ಕ್ರಮಗಳನ್ನು ಕೈಗೊಳ್ಳುವುದು.

(7) ಪ್ರಬಂಧಕ ಮಂಡಳಿಯು ಒಂದು ವರ್ಷದಲ್ಲಿ ಕನಿಷ್ಠ ಮೂರು ಸಲ ಸಭೆ ಸೇರತಕ್ಕದ್ದು.

25. **ಕಾರ್ಯನಿರ್ವಹಣಾ ಪರಿಷತ್ತು.-** (1) ಕಾರ್ಯನಿರ್ವಹಣಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಗಳು;

(ii) ಸಹ-ಕುಲಪತಿಗಳು;

(iii) ಕುಲಸಚಿವರು;

(iv) ಪ್ರಾಯೋಜಕ ಸಂಸ್ಥೆಯ ಇಬ್ಬರು ನಾಮನಿರ್ದೇಶಿತರು;

(v) ಕುಲಪತಿಗಳು ನಾಮನಿರ್ದೇಶಿಸಬಹುದಾದ ವಿದ್ಯಾಲಯಗಳ ಇಬ್ಬರು ಡೀನ್‌ಗಳು;

(2) ಕುಲಪತಿಯವರು ಕಾರ್ಯನಿರ್ವಹಣಾ ಪರಿಷತ್ತಿನ ಅಧ್ಯಕ್ಷರಾಗಿರತಕ್ಕದ್ದು ಮತ್ತು ಕುಲಸಚಿವರು ಕಾರ್ಯನಿರ್ವಹಣಾ ಪರಿಷತ್ತಿನ ಕಾರ್ಯದರ್ಶಿಯಾಗಿರತಕ್ಕದ್ದು.

(3) ಕಾರ್ಯನಿರ್ವಹಣಾ ಪರಿಷತ್ತಿನ ಅಧಿಕಾರಗಳು ಮತ್ತು ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ಕಾರ್ಯನಿರ್ವಹಣಾ ಪರಿಷತ್ತು ಎಲ್ಲಾ ಸಭೆಗಳಲ್ಲಿ ಯಾವಾಗಲೂ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು ಹಾಗೂ ಕುಲಪತಿಯವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೇ ಇದ್ದ ಸಂದರ್ಭದಲ್ಲಿ ಸಭೆಯಲ್ಲಿ ಹಾಜರಿರುವ ಸದಸ್ಯರು ಚುನಾಯಿಸಿದ ಯಾವೊಬ್ಬ ಇತರ ಸದಸ್ಯರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ಕಾರ್ಯನಿರ್ವಹಣಾ ಪರಿಷತ್ತಿನ ಸಭೆಯಲ್ಲಿ ಯಾವುದೇ ವಿಷಯವನ್ನು ಕುರಿತು ವಿವಾದ ಉಂಟಾದಲ್ಲಿ ಸದರಿ ವಿಷಯವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯದ ಬಗ್ಗೆ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**26. ಶೈಕ್ಷಣಿಕ ಪರಿಷತ್ತು.**–(1) ಶೈಕ್ಷಣಿಕ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹ–ಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಕಾರ್ಯದರ್ಶಿಗಳು

(iv) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಶೈಕ್ಷಣಿಕ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಶೈಕ್ಷಣಿಕ ಸಂಸ್ಥೆಯಾಗಿರತಕ್ಕದ್ದು ಮತ್ತು ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಹಾಗೂ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**27. ಸಂಶೋಧನಾ ಪರಿಷತ್ತು.**– (1) ಸಂಶೋಧನಾ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಸಂಶೋಧನಾ ಸಮಿತಿಯಾಗಿರತಕ್ಕದ್ದು ಹಾಗೂ ಸಂಶೋಧನಾ ಕ್ಷೇತ್ರದ ಆದ್ಯತೆಯೂ ಒಳಗೊಂಡಂತೆ, ವಿಶ್ವವಿದ್ಯಾಲಯವು ಕೈಗೊಳ್ಳಬೇಕಾದ ಸಂಶೋಧನೆಯ ಬಗ್ಗೆ ಒಂದು ವ್ಯಾಪಕವಾದ ಪರಿಪೂರ್ಣ ಭವಿಷ್ಯದ್ ದೃಷ್ಟಿಯನ್ನು ಒದಗಿಸತಕ್ಕದ್ದು. ಈ ಪರಿಷತ್ತು, ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಮತ್ತು ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಸಂಶೋಧನಾ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ಸಂಶೋಧನಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹ–ಕುಲಪತಿಯವರು – ಸದಸ್ಯರು

(iii) ಸಂಶೋಧನೆಯ ಡೀನ್ ಇವರು – ಕಾರ್ಯದರ್ಶಿ

(iv) ಅನ್ವೇಷಣಾ ವಿಭಾಗದ ಮುಖ್ಯಸ್ಥರು – ಸದಸ್ಯರು

(v) ಎಲ್ಲಾ ವ್ಯಾಸಂಗ ವಿಭಾಗಗಳ ಡೀನ್‌ಗಳು – ಸದಸ್ಯರು ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

**28. ಹಣಕಾಸು ಪರಿಷತ್ತು.**– (1) ಹಣಕಾಸು ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು ಅಥವಾ ಅವರ ನಾಮನಿರ್ದೇಶಿತರು – ಅಧ್ಯಕ್ಷರು

(ii) ಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಸದಸ್ಯರು

(iv) ಹಣಕಾಸು ಅಧಿಕಾರಿ – ಕಾರ್ಯದರ್ಶಿ

(V) ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು – ಸದಸ್ಯರು; ಮತ್ತು

(vi) ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಹಣಕಾಸು ಪರಿಷತ್ತು ಹಣಕಾಸಿನ ವಿಷಯಗಳನ್ನು ಕೈಗೊಳ್ಳುವ ವಿಶ್ವವಿದ್ಯಾಲಯದ ಪ್ರಧಾನ ಹಣಕಾಸು ಸಂಸ್ಥೆಯಾಗಿರತಕ್ಕದ್ದು ಹಾಗೂ ಅದು ಈ ಅಧಿನಿಯಮದ, ನಿಯಮಗಳ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಹಣಕಾಸು ವಿಷಯಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**29. ಇತರ ಪ್ರಾಧಿಕಾರಗಳು.–** ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ರಚನೆ, ಅಧಿಕಾರಗಳು ಹಾಗೂ ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

**30. ಒಂದು ಪ್ರಾಧಿಕಾರದ ಅಥವಾ ಸಂಸ್ಥೆಯ ಸದಸ್ಯತ್ವಕ್ಕೆ ಅನರ್ಹತೆ.–** ವಿಶ್ವವಿದ್ಯಾಲಯದ ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಒಬ್ಬ ವ್ಯಕ್ತಿಯು,–

(ಎ) ಅಸ್ವಸ್ಥ ಚಿತ್ತನಾಗಿದ್ದು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿಸಲ್ಪಟ್ಟಿದ್ದರೆ;

(ಬಿ) ಅವಿಮುಕ್ತ ದಿವಾಳಿಯಾಗಿದ್ದರೆ;

(ಸಿ) ನೈತಿಕ ಅಧ:ಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದರೆ;

(ಡಿ) ಖಾಸಗಿ ಬೋಧನಾ ತರಗತಿಗಳನ್ನು ನಡೆಸುತ್ತಿದ್ದರೆ ಅಥವಾ ಸ್ವತಃ ನಿರತನಾಗಿದ್ದರೆ;

(ಇ) ಯಾವುದೇ ವಿಧದಲ್ಲಿ, ಎಲ್ಲಿಯೇಯಾಗಲೀ ಯಾವುದೇ ಪರೀಕ್ಷೆಯನ್ನು ನಡೆಸುವಲ್ಲಿ ಅನುಚಿತ ಅಭ್ಯಾಸದಲ್ಲಿ ತೊಡಗಿದ್ದಕ್ಕಾಗಿ ಅಥವಾ ಉತ್ತೇಜಿಸಿದ್ದಕ್ಕಾಗಿ ದಂಡಿತನಾಗಿದ್ದರೆ;

(ಎಫ್) ಪ್ರಾಯೋಜಿತ ಸಂಸ್ಥೆಯು ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಯಾವೊಬ್ಬ ಸದಸ್ಯನು ಆ ಪದವನ್ನು ಹೊಂದಿರುವುದಕ್ಕೆ ಅರ್ಹನಲ್ಲನೆಂದು ಲಿಖಿತದಲ್ಲಿ ಅಭಿಪ್ರಾಯ ನೀಡಿದಾಗಲೆಲ್ಲಾ,

–ಸದಸ್ಯನಾಗಿರುವುದಕ್ಕೆ ಅನರ್ಹನಾಗತಕ್ಕದ್ದು.

**31. ಖಾಲಿಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಕಾರ್ಯ ಅಥವಾ ವ್ಯವಹರಣೆಗಳು ಕೇವಲ ಅದರಲ್ಲಿ ಯಾವುದೇ ಖಾಲಿಸ್ಥಾನ ಇದೆ ಎಂಬ ಕಾರಣದಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣದಿಂದ ಮಾತ್ರವೇ ಅಸಿಂಧುವಾಗತಕ್ಕದ್ದಲ್ಲ.

**32. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು.–** (1) ಯಾವುವೇ ಕಾರ್ಯಸೂಚಿ ವಿಷಯಗಳನ್ನು ಕುಲಾಧಿಪತಿಯವರ ಪೂರ್ವಾನುಮೋದನೆಯನ್ನು ಪಡೆಯದೇ ಪ್ರಬಂಧಕ ಮಂಡಳಿಯ ಅಥವಾ ಕಾರ್ಯನಿರ್ವಹಣಾ ಪರಿಷತ್ತಿನ ಅಥವಾ ಯಾವುದೇ ಸಮಿತಿಯ ಸಭೆಗಳ ಕಾರ್ಯಸೂಚಿ ವಿಷಯಗಳಲ್ಲಿ ಸೇರಿಸತಕ್ಕದ್ದಲ್ಲ ಅಥವಾ ಚರ್ಚೆಗೆ ತೆಗೆದುಕೊಳ್ಳತಕ್ಕದ್ದಲ್ಲ ಅಥವಾ ತೀರ್ಮಾನಿಸತಕ್ಕದ್ದಲ್ಲ.

(2) ಈ ಅಧಿನಿಯಮದ ಯಾವುದೇ ಉಪಬಂಧಗಳನ್ನು ಪಾಲಿಸದೆ ಇರುವ ಸಂದರ್ಭದಲ್ಲಿ, ಕುಲಾಧಿಪತಿಯವರು ವಿಶ್ವವಿದ್ಯಾಲಯದ ಯಾವುದೇ ಪದಾಧಿಕಾರಿ ಅಥವಾ ಸಂಸ್ಥೆಯು ತೆಗೆದುಕೊಂಡ ಎಲ್ಲಾ ತೀರ್ಮಾನಗಳನ್ನು ವಿಪರ್ಯಯಗೊಳಿಸುವ ಮೂಲಕ ಪರಿಹಾರ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಅಧಿಕಾರವನ್ನು ಎಲ್ಲಾ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಅಂಥ ಪರಿಹಾರ ಕ್ರಮದ ಪರಿಣಾಮವಾಗಿ, ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ವಿಶ್ವವಿದ್ಯಾಲಯದ ಪದಾಧಿಕಾರಿ ಅಥವಾ ಸಂಸ್ಥೆಯು ಕೈಗೊಂಡಿದ್ದ ಎಲ್ಲಾ ಅಂಥ ಕ್ರಮಗಳು, ಮೊದಲಿನಿಂದಲೂ ಶೂನ್ಯ ಮತ್ತು ಅಕೃತ ಎಂದು ಭಾವಿಸತಕ್ಕದ್ದು ಹಾಗೂ ತತ್ಪರಿಣಾಮವಾಗಿ, ಉಪಬಂಧ ಪಾಲಿಸದೇ ಇದ್ದ ವಿಷಯ ಅಥವಾ ನಿರ್ಧಾರದ ಸಂಬಂಧದಲ್ಲಿ ಅದಕ್ಕೆ ಮೊದಲು ಇದ್ದ ವಸ್ತುಸ್ಥಿತಿಯೇ ಮುಂದುವರಿಯತಕ್ಕದ್ದು.

## ಅಧ್ಯಾಯ – V

### ಪರಿನಿಯಮಗಳು ಮತ್ತು ವಿನಿಯಮಗಳು

**33. ಪರಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಪರಿನಿಯಮಗಳು, ವಿಶ್ವವಿದ್ಯಾಲಯಕ್ಕೆ ಮತ್ತು ಸಿಬ್ಬಂದಿಗೆ ಸಂಬಂಧಿಸಿದ ಎಲ್ಲಾ ಅಥವಾ ಯಾವುದೇ ವಿಷಯಕ್ಕೆ ಈ ಕೆಳಗಿನಂತೆ ಉಪಬಂಧ ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಕಾರ್ಯಕಲಾಪಗಳನ್ನು ನಡೆಸುವ ಮತ್ತು ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸದಿರುವ ಸಂಸ್ಥೆಗಳ ರಚನೆಯ ಕಾರ್ಯವಿಧಾನ;

(ii) ಶಾಶ್ವತ ಶಾಸನಬದ್ಧ ದತ್ತಿ ನಿಧಿ, ವಿಶ್ವವಿದ್ಯಾಲಯ ದತ್ತಿ ನಿಧಿ, ಸಾಮಾನ್ಯ ನಿಧಿ ಹಾಗೂ ಅಭಿವೃದ್ಧಿ ನಿಧಿಗಳ ನಿರ್ವಹಣೆ;

(iii) ಕುಲಪತಿಗಳು, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರ ನೇಮಕಾತಿಯ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಪ್ರಕಾರ್ಯಗಳು;

(iv) ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ, ಅಧ್ಯಾಪಕರ ಮತ್ತು ನೌಕರರ ನೇಮಕಾತಿ ವಿಧಾನ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(v) ವಿಶ್ವವಿದ್ಯಾಲಯ ಹಾಗೂ ಅದರ ಅಧಿಕಾರಿಗಳು, ವ್ಯಾಸಂಗ ವಿಭಾಗದ (ಫ್ಯಾಕಲ್ಟಿ) ಸದಸ್ಯರು, ನೌಕರರು ಹಾಗೂ ವಿದ್ಯಾರ್ಥಿಗಳ ನಡುವೆ ಉಂಟಾದ ವಿವಾದಗಳನ್ನು ಪರಿಹರಿಸುವ ಕಾರ್ಯವಿಧಾನ;

(vi) ವಿಭಾಗಗಳು ಮತ್ತು ವ್ಯಾಸಂಗ ವಿಭಾಗಗಳ (ಫ್ಯಾಕಲ್ಟಿಗಳ) ಸೃಜನೆ, ರದ್ದತಿ ಅಥವಾ ಮನಾರಚನೆ;

(vii) ಇತರ ವಿಶ್ವವಿದ್ಯಾಲಯಗಳು ಅಥವಾ ಉನ್ನತ ಕಲಿಕಾ ಸಂಸ್ಥೆಗಳ ಜೊತೆಯಲ್ಲಿ ಸಹಕರಿಸಬೇಕಾದ ರೀತಿ;

(viii) ಗೌರವ ಪದವಿಗಳ ನೀಡಿಕೆಯ ಕಾರ್ಯವಿಧಾನ;

(ix) ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿವೇತನ ಮಂಜೂರಾತಿಗೆ ಸಂಬಂಧಿಸಿದ ಉಪಬಂಧಗಳು;

(x) ವಿವಿಧ ವ್ಯಾಸಂಗ ಕ್ರಮಗಳಲ್ಲಿನ ಸೀಟುಗಳ ಸಂಖ್ಯೆಗೆ ಸಂಬಂಧಿಸಿದ ಕಾರ್ಯನೀತಿಗಳು ಮತ್ತು ಅಂಥ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಕಾರ್ಯವಿಧಾನ;

(xi) ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಶುಲ್ಕಕ್ಕೆ ಸಂಬಂಧಿಸಿದ ಕಾರ್ಯನೀತಿ;

(xii) ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಉಚಿತ ಶಿಕ್ಷಣ (ಫ್ರೀಶಿಪ್), ಪದಕಗಳು ಹಾಗೂ ಬಹುಮಾನಗಳನ್ನು ಪ್ರಾರಂಭಿಸುವುದು;

(xiii) ಪ್ರಬಂಧಕ ಮಂಡಳಿಯು ನಿರ್ಧರಿಸಬಹುದಾದ ಅಥವಾ ಈ ಅಧಿನಿಯಮದ ಅಡಿಯಲ್ಲಿ ಪರಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬೇಕಾದ ಅಗತ್ಯತೆಯುಳ್ಳ ಯಾವುದೇ ಇತರ ವಿಷಯಗಳು.

**34. ಪರಿನಿಯಮಗಳ ರಚನೆ ವಿಧಾನ.–** (1) ಕಾರ್ಯನಿರ್ವಹಣಾ ಪರಿಷತ್ತು ರಚಿಸಿದ ಮೊದಲ ಪರಿನಿಯಮಗಳನ್ನು ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಕಾರ್ಯನಿರ್ವಹಣಾ ಪರಿಷತ್ತು ಸಲ್ಲಿಸಿದ ಮೊದಲ ಪರಿನಿಯಮಗಳನ್ನು ಪ್ರಬಂಧಕ ಮಂಡಳಿಯು ಪರಿಗಣಿಸತಕ್ಕದ್ದು ಹಾಗೂ ತಾನು ಅವಶ್ಯವೆಂದು ಭಾವಿಸಬಹುದಾದ ಅಂಥ ಮಾರ್ಪಾಡುಗಳು, ಯಾವುದಾದರು ಇದ್ದಲ್ಲಿ, ಅವುಗಳೊಡನೆ ತನ್ನ ಅನುಮೋದನೆಯನ್ನು ನೀಡತಕ್ಕದ್ದು.

(3) ವಿಶ್ವವಿದ್ಯಾಲಯವು, ಪ್ರಬಂಧಕ ಮಂಡಳಿಯು ಅನುಮೋದಿಸಿದ ಮೊದಲ ಪರಿನಿಯಮಗಳನ್ನು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ಪ್ರಕಟಿಸತಕ್ಕದ್ದು ಮತ್ತು ತದನಂತರ ಮೊದಲ ಪರಿನಿಯಮಗಳ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**35. ಪರಿನಿಯಮಗಳ ತಿದ್ದುಪಡಿಯ ಅಧಿಕಾರ.–** ಪ್ರಬಂಧಕ ಮಂಡಳಿಯು ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸಬಹುದು ಅಥವಾ ಪರಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ಅವನ್ನು ನಿರಸನಗೊಳಿಸಬಹುದು.

V.C- 9449807739 Dr. B.S. Murthy



**36. ವಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ವಿನಿಯಮಗಳು ಈ ಮುಂದಿನ ವಿಷಯಗಳಿಗೆ ಉಪಬಂಧಗಳನ್ನು ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ವಿದ್ಯಾರ್ಥಿ ಪಟ್ಟಿಯಲ್ಲಿ ಅವರುಗಳ ದಾಖಲಾತಿ ಹಾಗೂ ಮುಂದುವರಿಕೆ;

(ii) ವಿಶ್ವವಿದ್ಯಾಲಯದ ಎಲ್ಲಾ ಪದವಿಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ನಿಗದಿಪಡಿಸತಕ್ಕ ವ್ಯಾಸಂಗ ಕ್ರಮಗಳು;

(iii) ಪದವಿಗಳ ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರದಾನ;

(iv) ಸಂಶೋಧನಾ ವೇತನಗಳು (ಫೆಲೋಶಿಪ್), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಪದಕಗಳು ಮತ್ತು ಬಹುಮಾನಗಳನ್ನು ನೀಡಲು ಷರತ್ತುಗಳು;

(v) ಪರೀಕ್ಷೆಗಳನ್ನು ನಡೆಸುವುದು ಹಾಗೂ ಪರೀಕ್ಷೆ ನಡೆಸುವ ಸಂಸ್ಥೆಗಳ, ಪರೀಕ್ಷಕರ, ಪರೀಕ್ಷಾ ಮೇಲ್ವಿಚಾರಕರ, ಟ್ಯಾಬುಲೇಟರ್‌ಗಳ ಮತ್ತು ಮಾಡರೇಟರ್‌ಗಳ ನೇಮಕಾತಿ ಷರತ್ತುಗಳು ಮತ್ತು ವಿಧಾನ ಹಾಗೂ ಅವರ ಕರ್ತವ್ಯಗಳು;

(vi) ವಿಶ್ವವಿದ್ಯಾಲಯದ ಪರೀಕ್ಷೆಗಳ, ಪದವಿಗಳ ಹಾಗೂ ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರವೇಶಕ್ಕೆ ವಿಧಿಸತಕ್ಕ ಶುಲ್ಕ;

(vii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನಲ್ಲಿ ವಿದ್ಯಾರ್ಥಿಗಳ ನಿವಾಸಕ್ಕಾಗಿ ಷರತ್ತುಗಳು;

(viii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಶಿಸ್ತು ಪಾಲನೆ;

(ix) ಈ ಅಧಿನಿಯಮದ ಅಡಿಯಲ್ಲಿನ ಪರಿನಿಯಮಗಳಲ್ಲಿ ಉಪಬಂಧ ಕಲ್ಪಿಸಬಹುದಾಂಥ ಇತರ ಎಲ್ಲಾ ವಿಷಯಗಳು.

**37. ವಿನಿಯಮಗಳ ರಚನೆ ವಿಧಾನ.–** ವಿನಿಯಮಗಳನ್ನು ಶೈಕ್ಷಣಿಕ ಪರಿಷತ್ತು ರಚಿಸತಕ್ಕದ್ದು ಹಾಗೂ ಕಾರ್ಯನಿರ್ವಹಣಾ ಪರಿಷತ್ತು ಅನುಮೋದಿಸತಕ್ಕದ್ದು.

**38. ವಿನಿಯಮಗಳ ತಿದ್ದುಪಡಿಗೆ ಅಧಿಕಾರ.–** ಕಾರ್ಯನಿರ್ವಹಣಾ ಪರಿಷತ್ತಿನ ಅನುಮೋದನೆಯೊಡನೆ ಶೈಕ್ಷಣಿಕ ಪರಿಷತ್ತು ಹೊಸ ವಿನಿಯಮಗಳನ್ನು ಅಥವಾ ಹೆಚ್ಚುವರಿ ವಿನಿಯಮಗಳನ್ನು ರಚಿಸಬಹುದು ಅಥವಾ ವಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ನಿರಸನಗೊಳಿಸಬಹುದು.

**39. ಶುಲ್ಕ ನಿಯಂತ್ರಣ ಸಮಿತಿ.–** (1) ಸರ್ಕಾರವು ರಚಿಸಿದ ನಿವೃತ್ತ ಸರ್ವೋಚ್ಚ ನ್ಯಾಯಾಲಯದ ಅಥವಾ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು ಮುಖ್ಯಸ್ಥರಾಗಿರುವ ಮತ್ತು ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ, ಉನ್ನತ ಶಿಕ್ಷಣ ಪ್ರಭಾರದಲ್ಲಿರುವ ಸರ್ಕಾರದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು, ವೈದ್ಯಕೀಯ ಶಿಕ್ಷಣದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು, ಒಬ್ಬ ಮಹಿಳೆಯೂ ಸೇರಿದಂತೆ ಪ್ರಬಂಧಕ ಮಂಡಲಿಯ ನಾಮನಿರ್ದೇಶಿಸಿದ ಇಬ್ಬರು ಶಿಕ್ಷಣ ತಜ್ಞರು ಇವರುಗಳನ್ನು ಒಳಗೊಂಡ ಒಂದು ಶುಲ್ಕ ನಿಯಂತ್ರಣ ಸಮಿತಿಯು, 9ನೇ ಪ್ರಕರಣದ ಅಡಿಯಲ್ಲಿ ಕರ್ನಾಟಕದ ವಿದ್ಯಾರ್ಥಿಗಳಿಗಾಗಿ ಮೀಸಲಿರಿಸಿದ ವಿಶ್ವವಿದ್ಯಾಲಯದ ಸ್ಥಾನಗಳ ಶುಲ್ಕವನ್ನು ನಿಯಂತ್ರಿಸತಕ್ಕದ್ದು. ಸಮಿತಿಯಲ್ಲಿ ಈ ಉದ್ದೇಶಕ್ಕಾಗಿ ಒಬ್ಬರು ಖ್ಯಾತ ಚಾರ್ಟರ್ಡ್ ಅಕೌಂಟೆಂಟ್ ರವರನ್ನು ಸಹ ಸದಸ್ಯನನ್ನಾಗಿ ಸೇರಿಸಿಕೊಳ್ಳತಕ್ಕದ್ದು.

(2) ಸಮಿತಿಯು, ವಿಶ್ವವಿದ್ಯಾಲಯದ ಪ್ರವೇಶಾತಿಯಲ್ಲಿ ಮತ್ತು ಶುಲ್ಕಗಳ ಸಂಗ್ರಹಣೆಯ ಅನುಪಾಲನೆ ನೋಡಿಕೊಳ್ಳತಕ್ಕದ್ದು.

## ಅಧ್ಯಾಯ – VI

### ಸಂಕೀರ್ಣ

**40. ನೌಕರರ ಸೇವಾ ಷರತ್ತುಗಳು.–** (1) ಪರಿನಿಯಮಗಳ ಮತ್ತು ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಥವಾ ನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳು, ಯಾವುದಾದರೂ ಇದ್ದಲ್ಲಿ, ಅವುಗಳಿಗೆ ಒಳಪಟ್ಟು ಪ್ರತಿಯೊಬ್ಬ ನೌಕರನು ಲಿಖಿತ ಕರಾರಿನ ಅಡಿಯಲ್ಲಿ

ನೇಮಕಗೊಳ್ಳತಕ್ಕದ್ದು ಮತ್ತು ಅದನ್ನು ವಿಶ್ವವಿದ್ಯಾಲಯದಲ್ಲಿ ಇಟ್ಟುಕೊಳ್ಳತಕ್ಕದ್ದು ಹಾಗೂ ಅದರ ಪ್ರತಿಯನ್ನು ಸಂಬಂಧಪಟ್ಟ ನೌಕರನಿಗೆ ನೀಡತಕ್ಕದ್ದು.

(2) ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಕಾರ್ಯವಿಧಾನಗಳ ಮೂಲಕ ನಿಯಂತ್ರಿಸತಕ್ಕದ್ದು.

(3) ಕರಾರಿನಿಂದಾಗಿ ವಿಶ್ವವಿದ್ಯಾಲಯ ಮತ್ತು ನೌಕರನ ಮಧ್ಯದಲ್ಲಿ ಉದ್ಭವಿಸಬಹುದಾದ ಯಾವುದೇ ವಿವಾದವನ್ನು, ಲಿಖಿತ ಕರಾರಿನಲ್ಲಿ ಉಪಬಂಧಿಸಿದ ವಿಧಾನದಲ್ಲಿ ಹಾಗೂ ಪರಿನಿಯಮಗಳ ಅನುಸಾರವಾಗಿ ಪರಿಹರಿಸತಕ್ಕದ್ದು.

**41. ಮೇಲ್ಮನವಿ ಹಕ್ಕು.–** ವಿಶ್ವವಿದ್ಯಾಲಯವು ತನ್ನ ನೌಕರರ ಅಥವಾ ವಿದ್ಯಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡ ಸಂದರ್ಭದಲ್ಲಿ, ಬಾಧಿತ ನೌಕರ ಅಥವಾ ವಿದ್ಯಾರ್ಥಿಗಳು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಅಂಥ ಪ್ರಾಧಿಕಾರಕ್ಕೆ ಮೇಲ್ಮನವಿಯನ್ನು ಸಲ್ಲಿಸುವ ಹಕ್ಕನ್ನು ಹೊಂದಿರತಕ್ಕದ್ದು.

**42. ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿ .–** ವಿಶ್ವವಿದ್ಯಾಲಯವು, ತನ್ನ ನೌಕರರ ಪ್ರಯೋಜನಕ್ಕಾಗಿ, ಪರಿನಿಯಮಗಳು ಮತ್ತು ಜಾರಿಯಲ್ಲಿರುವ ಕಾನೂನುಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿಯನ್ನು ರಚಿಸತಕ್ಕದ್ದು ಹಾಗೂ ಅಂಥ ವಿಮಾ ಯೋಜನೆಗಳನ್ನು ಒದಗಿಸತಕ್ಕದ್ದು.

**43. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಅಥವಾ ಇತರ ಸಂಸ್ಥೆಯ ಸದಸ್ಯನಾಗಿ ಯಾವೊಬ್ಬ ವ್ಯಕ್ತಿಯು ಸೂಕ್ತವಾಗಿ ಆಯ್ಕೆಯಾಗಿದ್ದಾನೆಯೇ ಅಥವಾ ನೇಮಕಗೊಂಡಿದ್ದಾನೆಯೇ ಅಥವಾ ಅದಕ್ಕೆ ಅರ್ಹನಾಗಿದ್ದಾನೆಯೇ ಎಂಬ ಯಾವುದೇ ಪ್ರಶ್ನೆ ಉದ್ಭವಿಸಿದರೆ, ಆ ವಿಷಯವನ್ನು ತೀರ್ಮಾನಕ್ಕಾಗಿ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**44. ಸಮಿತಿಗಳ ರಚನೆ.–** 23ನೇ ಪ್ರಕರಣದಲ್ಲಿ ನಮೂದಿಸಿದ ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಅಧಿಕಾರವನ್ನು ಹೊಂದಿರುವ ಅಂಥ ಸದಸ್ಯರನ್ನು ಒಳಗೊಂಡ ಅಂಥ ಪ್ರಾಧಿಕಾರದ ಒಂದು ಸಮಿತಿಯನ್ನು ರಚಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**45. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಂಸ್ಥೆಯ ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ಪೈಕಿ ಯಾವುದೇ ಸ್ಥಾನವು ಆಕಸ್ಮಿಕವಾಗಿ ಖಾಲಿಯಾದರೆ, ಯಾರ ಸ್ಥಾನವು ಖಾಲಿಯಾಗಿ ತುಂಬಬೇಕಾಗಿ ಬಂದಿದೆಯೋ ಆ ಸದಸ್ಯನನ್ನು ಯಾವ ರೀತಿಯಲ್ಲಿ ಆರಿಸಲಾಗಿತ್ತೋ ಅದೇ ರೀತಿಯಲ್ಲಿ ಹೊಸ ಸದಸ್ಯನನ್ನು ಆರಿಸಿ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ಖಾಲಿ ಸ್ಥಾನವನ್ನು ಭರ್ತಿ ಮಾಡಿದ ವ್ಯಕ್ತಿಯು ಆತನು ಯಾವ ಸದಸ್ಯನ ಸ್ಥಾನದಲ್ಲಿ ಭರ್ತಿಯಾಗಿರುವನೋ ಆ ಸದಸ್ಯನು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯನಾಗಿ ಉಳಿಯುತ್ತಿದ್ದ ಬಾಕಿ ಅವಧಿಯವರೆಗೆ ಮಾತ್ರ ಸದಸ್ಯನಾಗಿರತಕ್ಕದ್ದು.

**46. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.–** ಈ ಅಧಿನಿಯಮಕ್ಕೆ ಅಥವಾ ಪರಿನಿಯಮಗಳಿಗೆ ಅಥವಾ ನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ವಿಶ್ವವಿದ್ಯಾಲಯದ ಯಾವೊಬ್ಬ ಅಧಿಕಾರಿ ಅಥವಾ ಇತರ ನೌಕರರ ವಿರುದ್ಧ ಯಾವುದೇ ದಾವೆ ಅಥವಾ ಇತರ ಕಾನೂನು ವ್ಯವಹರಣೆಗಳನ್ನು ನಡೆಸಲು ಅವಕಾಶ ಇರತಕ್ಕದ್ದಲ್ಲ.

**47. ತಾತ್ಕಾಲಿಕ ಉಪಬಂಧಗಳು.–** ಈ ಅಧಿನಿಯಮದ ಮತ್ತು ಪರಿನಿಯಮಗಳ ಯಾವುದೇ ಇತರ ಉಪಬಂಧಗಳಲ್ಲಿ ಏನೇ ಇದ್ದರೂ,–

(i) ಮೊದಲ ಕುಲಪತಿ ಮತ್ತು ಸಹಕುಲಪತಿ, ಯಾರಾದರೂ ಇದ್ದರೆ, ಅವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(ii) ಮೊದಲ ಕುಲಸಚಿವರನ್ನು ಮತ್ತು ಮೊದಲ ಹಣಕಾಸು ಅಧಿಕಾರಿಯವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು; ಮತ್ತು

(iii) ಮೊದಲ ಕಾರ್ಯನಿರ್ವಹಣಾ ಪರಿಷತ್ತು, ಮೊದಲ ಹಣಕಾಸು ಸಮಿತಿ, ಮೊದಲ ಸಂಶೋಧನಾ ಪರಿಷತ್ತು ಹಾಗೂ ಮೊದಲ ಶೈಕ್ಷಣಿಕ ಪರಿಷತ್ತನ್ನು ಕುಲಾಧಿಪತಿಯವರು ರಚಿಸತಕ್ಕದ್ದು.

**48. ಶಾಶ್ವತ ಶಾಸನಬದ್ಧ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಕನಿಷ್ಠ ಇಪ್ಪತ್ತೈದು ಕೋಟಿ ರೂಪಾಯಿಗಳನ್ನುಳ್ಳ ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು ಇದರ ಪೈಕಿ ಕನಿಷ್ಠ ಹದಿನೈದು ಕೋಟಿ ರೂಪಾಯಿಗಳನ್ನು

ನಗದು ಹಣದ ರೂಪದಲ್ಲಿ ಮತ್ತು ಉಳಿದದ್ದು ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ಇರತಕ್ಕದ್ದು ಮತ್ತು ಇದನ್ನು ತಾನಾಗಿಯೇ ಹೆಚ್ಚಿಸಬಹುದಾಗಿದ್ದು ಆದರೆ ಕಡಿಮೆ ಮಾಡತಕ್ಕದ್ದಲ್ಲ:

ಪರಂತು, ಬೆಂಗಳೂರು ಅಥವಾ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊರಗಿರುವ ವಿಶ್ವವಿದ್ಯಾಲಯದ ಸಂದರ್ಭದಲ್ಲಿ ಕನಿಷ್ಠ ಹತ್ತು ಕೋಟಿ ರೂಪಾಯಿಗಳು ನಗದು ರೂಪದಲ್ಲಿರತಕ್ಕದ್ದು ಮತ್ತು ಉಳಿದ ಐದು ಕೋಟಿ ರೂಪಾಯಿಗಳು ಬ್ಯಾಂಕ್ ಗ್ಯಾರಂಟಿಯ ರೂಪದಲ್ಲಿರತಕ್ಕದ್ದು.

(2) ವಿಶ್ವವಿದ್ಯಾಲಯವು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಹಣವನ್ನು ಹೂಡಲು ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯವು ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಗೆ ವರ್ಗಾವಣೆ ಮಾಡಬಹುದು. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನೂ ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(4) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಿದ ವರಮಾನದ ಶೇಕಡಾ ಎಪ್ಪತ್ತೈದರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತೈದರಷ್ಟನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಯಲ್ಲಿ ತೊಡಗಿಸತಕ್ಕದ್ದು.

**49. ವಿಶ್ವವಿದ್ಯಾಲಯದ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ನಿಧಿಗಳನ್ನು ಒಳಗೊಂಡ ವಿಶ್ವವಿದ್ಯಾಲಯದ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದು ಕಾಲಕಾಲಕ್ಕೆ ಸ್ವೀಕರಿಸಬಹುದಾದ ದೇಣಿಗೆಗಳು ಮತ್ತು ಇತರ ನಿಧಿಗಳನ್ನು ಒಳಗೊಂಡಿರತಕ್ಕದ್ದು.

(2) ವಿಶ್ವವಿದ್ಯಾಲಯವು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ವಿಶ್ವವಿದ್ಯಾಲಯದ ದತ್ತಿನಿಧಿಯನ್ನು ಹೂಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯ ದತ್ತಿ ನಿಧಿಯು, ವಿಶ್ವವಿದ್ಯಾಲಯವು ತನ್ನ ಸಾಮಾಜಿಕ ಧ್ಯೇಯೋದ್ದೇಶಗಳನ್ನು ನೆರವೇರಿಸುವ ಸಂದರ್ಭದಲ್ಲಿ ಮತ್ತು / ಅಥವಾ ಮುಂಗಾಣದ ಸನ್ನಿವೇಶದಲ್ಲಿ ಉದ್ಭವಿಸಬಹುದಾದ ಹಣಕಾಸು ಸವಾಲುಗಳಿಂದ ತನ್ನನ್ನು ರಕ್ಷಿಸಿಕೊಳ್ಳುವುದಕ್ಕಾಗಿ, ಸ್ವಇಚ್ಛೆಯಿಂದ ನಿರ್ವಹಿಸಿಕೊಂಡು ಬರಲು ಮತ್ತು ಜವಾಬ್ದಾರಿಯಿಂದ ಹಣ ಹೂಡಿಕೆ ಮಾಡಲು ಇಚ್ಛೆಯುಳ್ಳವರಾಗಿ ಸ್ವಯಂ ವಿಧಿಸಿಕೊಂಡ ನಿಧಿಯಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಗೆ ವರ್ಗಾಯಿಸಬಹುದು. ವಿಶ್ವವಿದ್ಯಾಲಯದ ಸಮಾಪನೆಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನು ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(5) ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಬರುವ ವರಮಾನದ ಶೇಕಡಾ ಎಂಭತ್ತರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸದ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತರಷ್ಟನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**50. ಸಾಮಾನ್ಯ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಸಾಮಾನ್ಯ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯವು ವಿಧಿಸಬಹುದಾದ ಎಲ್ಲಾ ಶುಲ್ಕಗಳು;

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೆ ಇರುವ ಯಾವುದೇ ಇತರ ಮೂಲದಿಂದ ಸ್ವೀಕರಿಸಲಾದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ದೇಣಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು;

(2) ಸಾಮಾನ್ಯ ನಿಧಿಗೆ ಜಮಾ ಮಾಡುವ ನಿಧಿಗಳನ್ನು ವಿಶ್ವವಿದ್ಯಾಲಯದ ಎಲ್ಲಾ ಆವರ್ತಕ ವೆಚ್ಚಗಳನ್ನು ಭರಿಸಲು ಉಪಯೋಗಿಸಿಕೊಳ್ಳತಕ್ಕದ್ದು.

**51. ಅಭಿವೃದ್ಧಿ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಅಭಿವೃದ್ಧಿ ನಿಧಿಯನ್ನು ಸಹ ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಅಭಿವೃದ್ಧಿ ಶುಲ್ಕಗಳು;

(ii) ವಿಶ್ವವಿದ್ಯಾಲಯದ ಅಭಿವೃದ್ಧಿಯ ಉದ್ದೇಶಗಳಿಗಾಗಿ ಯಾವುದೇ ಇತರ ಮೂಲಗಳಿಂದ ಸ್ವೀಕರಿಸಿದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ವಂತಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು / ವಂತಿಗೆಗಳು; ಮತ್ತು

(v) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಲಾದ ಎಲ್ಲಾ ವರಮಾನಗಳು.

(2) ಅಭಿವೃದ್ಧಿ ನಿಧಿಗೆ ಕಾಲಕಾಲಕ್ಕೆ ಜಮಾ ಮಾಡಿದ ನಿಧಿಯನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಉಪಯೋಗಿಸಿಕೊಳ್ಳತಕ್ಕದ್ದು.

**52. ನಿಧಿಗಳ ನಿರ್ವಹಣೆ.–** 48, 49, 50 ಮತ್ತು 51ನೇ ಪ್ರಕರಣಗಳಡಿಯಲ್ಲಿ ಸ್ಥಾಪಿಸಲಾದ ನಿಧಿಗಳನ್ನು ಪ್ರಬಂಧಕ ಮಂಡಳಿಯ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ನಿಯಂತ್ರಿಸತಕ್ಕದ್ದು ಹಾಗೂ ನಿರ್ವಹಿಸತಕ್ಕದ್ದು.

**53. ವಾರ್ಷಿಕ ವರದಿ.–** (1) ವಿಶ್ವವಿದ್ಯಾಲಯದ ವಾರ್ಷಿಕ ವರದಿಯನ್ನು ಕಾರ್ಯನಿರ್ವಹಣಾ ಪರಿಷತ್ತಿನ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ಅದರ ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಪ್ರಬಂಧಕ ಮಂಡಳಿಯು ವಾರ್ಷಿಕ ವರದಿಯನ್ನು ತನ್ನ ಸಭೆಯಲ್ಲಿ ಪರಿಗಣಿಸತಕ್ಕದ್ದು ಹಾಗೂ ಅದನ್ನು ಮಾರ್ಪಾಡುಗಳೊಡನೆ ಅಥವಾ ಮಾರ್ಪಾಡುಗಳಿಲ್ಲದೆ ಅನುಮೋದಿಸಬಹುದು.

(3) ಪ್ರಬಂಧಕ ಮಂಡಳಿಯು ಸೂಕ್ತವಾಗಿ ಅನುಮೋದಿಸಿದ ವಾರ್ಷಿಕ ವರದಿಯ ಒಂದು ಪ್ರತಿಯನ್ನು ಪ್ರತಿವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ಡಿಸೆಂಬರ್ 31ಕ್ಕೆ ಮೊದಲು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**54. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.–** (1) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕ ಪತ್ರ ಮತ್ತು ಜಮಾ ಖರ್ಚು ಪಟ್ಟಿಯನ್ನು ಕಾರ್ಯನಿರ್ವಹಣಾ ಪರಿಷತ್ತಿನ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯಕ್ಕೆ ಎಲ್ಲಾ ಮೂಲಗಳಿಂದ ಪ್ರಾಪ್ತವಾಗುವ ಅಥವಾ ಸ್ವೀಕರಿಸಲಾಗುವ ಎಲ್ಲಾ ನಿಧಿಗಳು ಹಾಗೂ ವಿತರಿಸಿದ ಅಥವಾ ಸಂದಾಯ ಮಾಡಿದ ಎಲ್ಲಾ ಮೊಬಲಗುಗಳನ್ನು ವಿಶ್ವವಿದ್ಯಾಲಯವು ನಿರ್ವಹಿಸುವ ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕಪತ್ರಗಳನ್ನು ಪ್ರತಿ ವರ್ಷವೂ ಭಾರತದ ಚಾರ್ಟೆಡ್ ಅಕೌಂಟೆಂಟ್‌ಗಳ ಸಂಸ್ಥೆಯ ಸದಸ್ಯರಾಗಿರುವ ಒಬ್ಬ ಲೆಕ್ಕಪರಿಶೋಧಕರಿಂದ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಲೆಕ್ಕಪರಿಶೋಧನಾ ವರದಿಯೊಡನೆ, ಪ್ರತಿ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ನವೆಂಬರ್ 30ಕ್ಕೆ ಮೊದಲು ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(4) ವಾರ್ಷಿಕ ಲೆಕ್ಕಪತ್ರಗಳು, ಜಮಾಖರ್ಚು ಪಟ್ಟಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಪ್ರಬಂಧಕ ಮಂಡಳಿಯು ತನ್ನ ಸಭೆಯಲ್ಲಿ ಪರ್ಯಾಲೋಚಿಸತಕ್ಕದ್ದು ಮತ್ತು ಪ್ರಬಂಧಕ ಮಂಡಳಿಯು ಅದನ್ನು ತನ್ನ ಅಭಿಪ್ರಾಯಗಳೊಡನೆ ಸಂದರ್ಶಕರಿಗೆ ಹಾಗೂ ಸರ್ಕಾರಕ್ಕೆ ಪ್ರತಿ ವರ್ಷದ ಡಿಸೆಂಬರ್ 31 ರಂದು ಅಥವಾ ಅದಕ್ಕೆ ಮೊದಲು ಕಳುಹಿಸತಕ್ಕದ್ದು.

**55. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಮಿತಿಯ ಯಾವುದೇ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ ಅಥವಾ ಗೊತ್ತುವಳಿಯು ಅಥವಾ ವಿಶ್ವವಿದ್ಯಾಲಯದ ಸ್ವಾಧೀನದಲ್ಲಿರುವ ಇತರ ದಾಖಲೆಗಳು ಅಥವಾ ವಿಶ್ವವಿದ್ಯಾಲಯವು ಯುಕ್ತವಾಗಿ ನಿರ್ವಹಿಸುವ ಯಾವುದೇ ರಿಜಿಸ್ಟರ್‌ನಲ್ಲಿಯ ಯಾವುದೇ ನಮೂದುಗಳ ಪ್ರತಿಯನ್ನು, ಅದರ ಮೇಲೆ ಕುಲಸಚಿವರು ಪ್ರಮಾಣೀಕರಿಸಿದ್ದರೆ, ಅದನ್ನು ಅಂಥ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ, ಗೊತ್ತುವಳಿ ಅಥವಾ ದಾಖಲೆ ಅಥವಾ ರಿಜಿಸ್ಟರ್‌ನಲ್ಲಿ ಇರುವ ನಮೂದನ್ನು ಮೇಲ್ನೋಟದ ಸಾಕ್ಷ್ಯವೆಂಬುದಾಗಿ ಸ್ವೀಕರಿಸತಕ್ಕದ್ದು ಮತ್ತು ವಿಷಯಗಳ ಸಾಕ್ಷಿಯಾಗಿ ಅಂಗೀಕರಿಸತಕ್ಕದ್ದು ಹಾಗೂ ಮೂಲ ದಾಖಲೆಗಳನ್ನೇ ಸಲ್ಲಿಸಿದ್ದರೆ ಅದನ್ನು, ದಾಖಲಿಸಿರುವ ವಿಷಯಗಳು ಮತ್ತು ವಹಿವಾಟುಗಳ ಸಾಕ್ಷ್ಯವಾಗಿ ಅಂಗೀಕರಿಸಲಾಗುತ್ತಿತ್ತೋ, ಅದೇ ರೀತಿಯಲ್ಲಿ ಇವನ್ನೂ ಸಾಕ್ಷ್ಯವಾಗಿ ಅಂಗೀಕರಿಸತಕ್ಕದ್ದು.

**56. ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ.–** ರಾಜ್ಯಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಥವಾ ಅದರಲ್ಲಿ ಇರುವ ಯಾವುವೇ ಉಪಬಂಧಗಳನ್ನು ಅಥವಾ ಅದರಡಿಯಲ್ಲಿ ರಚಿಸಿದ ಯಾವುವೇ ನಿಯಮಗಳು ಅಥವಾ ಆದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿರ್ದೇಶನ ನೀಡುವುದು ಅವಶ್ಯವೆಂದು ಅಥವಾ ಉಚಿತವೆಂದು ಅಭಿಪ್ರಾಯಪಟ್ಟಲ್ಲಿ ಅದು ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ ಅಥವಾ ಸಂದರ್ಭಾನುಸಾರವಾಗಿ ಕಾರ್ಯನಿರ್ವಹಣಾ ಪರಿಷತ್ತು ಅಂಥ ಪ್ರತಿಯೊಂದು ನಿರ್ದೇಶನವನ್ನು ಪಾಲಿಸತಕ್ಕದ್ದು.

**57. ದಂಡಗಳು.–** (1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿತವಾದ ನಿಯಮಗಳು ಉಪಬಂಧಗಳನ್ನು ಅಥವಾ ಯಾವುದೇ ಪರೀಕ್ಷಾ ವಿಷಯಗಳನ್ನು ಅಥವಾ ಪದವಿಗಳನ್ನು ನೀಡುವುದಕ್ಕೆ ಅಥವಾ ಅಂಕಪಟ್ಟಿಗಳನ್ನು ನೀಡುವುದಕ್ಕೆ ಸಂಬಂಧಪಟ್ಟ ವಿಷಯಗಳಲ್ಲಿ ಉಲ್ಲಂಘನೆಗಳನ್ನು ಮಾಡುವ ಯಾವೊಬ್ಬ ವ್ಯಕ್ತಿಯು, ಅಪರಾಧ ನಿರ್ಣಯವಾದ ಮೇಲೆ, ಐವತ್ತು ಸಾವಿರ ರೂಪಾಯಿಗಳಿಗೆ ಕಡಿಮೆಯಲ್ಲದ ಆದರೆ ಹತ್ತು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಆರು ತಿಂಗಳ ಅವಧಿಗಿಂತ ಕಡಿಮೆಯಲ್ಲದ ಆದರೆ ಎರಡು ವರ್ಷಗಳ ಅವಧಿಯವರೆಗೆ ವಿಸ್ತರಿಸಬಹುದಾದ ಕಾರಾವಾಸದಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು:

ಪರಂತು, ವಿಶ್ವವಿದ್ಯಾಲಯವೂ ಸಹ ಒಳಗೊಂಡಿರುವಲ್ಲಿ, ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಈ ಅಧಿನಿಯಮದ ಅಡಿಯಲ್ಲಿ ಮಂಜೂರು ಮಾಡಲಾದ ಅನುಮತಿ ಪತ್ರವನ್ನು ಹಿಂತೆಗೆದುಕೊಳ್ಳತಕ್ಕದ್ದು.

(2) ಈ ಪ್ರಕರಣದ ಅಡಿಯಲ್ಲಿಯ ದಂಡವನ್ನು ಇತರ ಯಾವುದೇ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಲಾದ ದಂಡಕ್ಕೆ ಬಾಧಕವಾಗದಂತೆ ವಿಧಿಸಬಹುದು.

**58. ಪ್ರವೇಶಿಸುವ ಮತ್ತು ಪರಿಶೋಧಿಸುವ ಅಧಿಕಾರ.–** ಈ ಉದ್ದೇಶಕ್ಕಾಗಿ, ರಾಜ್ಯಸರ್ಕಾರದಿಂದ ಪ್ರಾಧಿಕೃತಗೊಂಡ 'ಎ' ಸಮೂಹದ ಅಧಿಕಾರಿ ದರ್ಜೆಗಿಂತ ಕಡಿಮೆಯಿಲ್ಲದ ದರ್ಜೆಯ ಯಾವೊಬ್ಬ ಅಧಿಕಾರಿಯು, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಶನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ 37) ಅಡಿಯಲ್ಲಿ ನಿರ್ದಿಷ್ಟಪಡಿಸಿರಬಹುದಾದ ಅಂಥ ಷರತ್ತುಗಳಿಗೆ ಒಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ, ಆ ಅಧಿನಿಯಮದ 9ನೇ ಪ್ರಕರಣದ ಅಡಿಯಲ್ಲಿ ಉಪಬಂಧಿಸಲಾದಂತಹವೇ ಅಧಿಕಾರಗಳನ್ನು ಚಲಾಯಿಸಲು ಮತ್ತು ಪ್ರಕಾರ್ಯಗಳನ್ನು ನೆರವೇರಿಸಲು ಅಧಿಕೃತನಾದ ಅಧಿಕಾರಿ ಎಂಬುದಾಗಿ ಭಾವಿಸತಕ್ಕದ್ದು.

**59. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ನಿರ್ದೇಶನವನ್ನು ನೀಡುವ ಅಧಿಕಾರ.–** (1) ವಿಶ್ವವಿದ್ಯಾಲಯವು ತನ್ನ ರಚನೆ ಅಥವಾ ನಿಗಮನವನ್ನು ನಿಯಂತ್ರಿಸುವ ಕಾನೂನಿಗೆ ಅನುಸಾರವಾಗಿ ತನ್ನ ಸಮಾಪನವನ್ನು ಉದ್ದೇಶಿಸಿದ್ದಲ್ಲಿ, ಅದು ಕನಿಷ್ಠ ಆರು ತಿಂಗಳ ಲಿಖಿತ ಪೂರ್ವ ಸೂಚನೆಯನ್ನು (ನೋಟಿಸು) ಸರ್ಕಾರಕ್ಕೆ ನೀಡತಕ್ಕದ್ದು.

(2) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಈ ಕೆಳಗಿನವುಗಳ ಬಗ್ಗೆ, ಎಂದರೆ:–

(i) ಪದವಿಯನ್ನು ನೀಡುವುದಕ್ಕಾಗಿ ಬೋಧನೆಯ ಗುಣಮಟ್ಟ;

(ii) ಶಿಕ್ಷಣದ ಗುಣಮಟ್ಟ;

(iii) ಉನ್ನತ ಶಿಕ್ಷಣದ ವ್ಯಾಪಾರೀಕರಣವನ್ನು ತಡೆಗಟ್ಟುವುದು;

(iv) ಅಧಿನಿಯಮದ ಉಪಬಂಧಗಳ ಉಲ್ಲಂಘನೆಯ ಬಗ್ಗೆ, ಯಾವುದಾದರೂ ಇದ್ದಲ್ಲಿ,

– ಇವುಗಳ ಬಗ್ಗೆ ನಿಯತಕಾಲಿಕ ಪರಿವೀಕ್ಷಣೆಯನ್ನು ನಡೆಸತಕ್ಕದ್ದು ಮತ್ತು ಸರ್ಕಾರಕ್ಕೆ ವರದಿಯನ್ನು ಕಳುಹಿಸತಕ್ಕದ್ದು.

(3) ದುರ್ವ್ಯವಹರಣೆ, ದುರಾಡಳಿತ ಮತ್ತು ಅಶಿಸ್ತು ಆಗಿದೆ ಎಂಬುದನ್ನು ಗುರುತಿಸಿದರೆ, ಸರ್ಕಾರವು, ವಿಶ್ವವಿದ್ಯಾಲಯದ ಆಡಳಿತವರ್ಗದವರಿಗೆ ಆಡಳಿತವನ್ನು ಸರಿಪಡಿಸಬೇಕೆಂದು ನಿರ್ದೇಶನಗಳನ್ನು ನೀಡತಕ್ಕದ್ದು. ನಿಯಮಿಸಬಹುದಾದ ಅಂಥ ಅವಧಿಯೊಳಗೆ ಆ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುವ ಹಕ್ಕು ಸರ್ಕಾರದಲ್ಲಿ ನಿಹಿತವಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ವಿಧಾನವು, ಸರ್ಕಾರವು ಈ ಸಂಬಂಧದಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು:

ಪರಂತು, ವಿಶ್ವವಿದ್ಯಾಲಯವು ತನ್ನ ಕಾರಣಗಳನ್ನು ಹೇಳಿಕೊಳ್ಳಲು ಸಮಂಜಸ ಅವಕಾಶಗಳನ್ನು ನೀಡಿದ ಹೊರತು ಅಂಥ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

(5) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೋಟಿಸನ್ನು ಸ್ವೀಕರಿಸಿದ ಮೇಲೆ, ಸರ್ಕಾರವು ಸಂಬಂಧಿಸಿದ ನಿಯಂತ್ರಣಾ ಪ್ರಾಧಿಕಾರದೊಡನೆ ಸಮಾಲೋಚಿಸಿ, ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ಅಥವಾ ವ್ಯಾಸಂಗ ಕ್ರಮವನ್ನು ಪರಿಸಮಾಪನಗೊಳಿಸಲು ಉದ್ದೇಶಿಸಿದ ದಿನಾಂಕದಿಂದ, ವಿಶ್ವವಿದ್ಯಾಲಯದಲ್ಲಿ ನಿಯತ ವ್ಯಾಸಂಗ ಕ್ರಮಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕೊನೆಯ ತಂಡ (ಬ್ಯಾಚ್) ತನ್ನ ವ್ಯಾಸಂಗ ಕ್ರಮವನ್ನು ಮುಗಿಸುವವರೆಗೆ ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು.

**60. ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು.**- (1) 59ನೇ ಪ್ರಕರಣದ (5)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ಅದರ ಆಡಳಿತಾತ್ಮಕ ವೆಚ್ಚಗಳನ್ನು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿ, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಭರಿಸತಕ್ಕದ್ದು.

(2) ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ವಿಶ್ವವಿದ್ಯಾಲಯದ ವೆಚ್ಚವನ್ನು ಭರಿಸಲು 48, 49, 50 ಮತ್ತು 51ನೇ ಪ್ರಕರಣಗಳ ಅಡಿಯಲ್ಲಿ ಉಲ್ಲೇಖಿಸಲಾದ ನಿಧಿಯು ಸಾಕಷ್ಟು ಇಲ್ಲದಿದ್ದಲ್ಲಿ, ಅಂಥ ವೆಚ್ಚವನ್ನು ಸರ್ಕಾರವು, ವಿಶ್ವವಿದ್ಯಾಲಯದ ಸ್ವತ್ತುಗಳು ಮತ್ತು ಆಸ್ತಿಗಳನ್ನು ವಿಲೇ ಮಾಡುವ ಮೂಲಕ ಭರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಸಮಾಪನೆಯು ದುರ್ವ್ಯವಹರಣೆ ಅಥವಾ ದುರಾಡಳಿತದ ಕಾರಣಗಳಿಗಾಗಿ ಆಗಿದ್ದರೆ, ಸರ್ಕಾರವು ಅಂಥ ದುರ್ವ್ಯವಹಾರಕ್ಕೆ ಅಥವಾ ದುರಾಡಳಿತಕ್ಕೆ ಹೊಣೆಯಾಗಿರುವ ವ್ಯಕ್ತಿಗಳನ್ನು ಗುರುತಿಸುವ ಮತ್ತು ಅವರ ಮೇಲೆ ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ದಂಡನೆಯನ್ನು ವಿಧಿಸಲು ಸ್ವತಂತ್ರವಾಗಿರತಕ್ಕದ್ದು.

**61. ತೊಂದರೆಗಳ ನಿವಾರಣೆಗೆ ಅಧಿಕಾರ.**- (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಅಥವಾ ಆದೇಶದ ಮೂಲಕ ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಐದು ವರ್ಷಗಳು ಮುಕ್ತಾಯವಾದ ತರುವಾಯ ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಅಧಿಸೂಚನೆ ಅಥವಾ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

**62. ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ.**- (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ಹೊರಡಿಸಲಾದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಉಭಯ ಸದನಗಳು ಒಪ್ಪಿದರೆ ತದನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ದತಿಯು ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವನ್ನು ಉಂಟುಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಜಿ.ಕೆ.ಬೋರೇಗೌಡ**

ಸರ್ಕಾರದ ಕಾರ್ಯದರ್ಶಿ

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಹಿ7) (500 ಪ್ರತಿಗಳು)

RN[illegible]. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| | | |
|---|---|---|
| ಭಾಗ - IV-A | ಬೆಂಗಳೂರು, ಬುಧವಾರ, ಫೆಬ್ರವರಿ ೨೭, ೨೦೧೩ (ಫಾಲ್ಗುಣ ೮, ಶಕ ವರ್ಷ ೧೯೩೪) | ನಂ. ೫೨೬ |
| Part - IV-A | Bangalore, Wednesday, February 27, 2013 (Phalguna 8, Shaka Varsha 1934) | No. 526 |


ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ

ಅಧಿಸೂಚನೆ

**ಸಂಖ್ಯೆ: ಸಂವ್ಯಶಾಇ 44 ಶಾಸನ 2012, ಬೆಂಗಳೂರು, ದಿನಾಂಕ: 27-02-2013**

ದಯಾನಂದ ಸಾಗರ ವಿಶ್ವವಿದ್ಯಾಲಯ ವಿಧೇಯಕ, 2012. – ಇದಕ್ಕೆ 2013ರ ಫೆಬ್ರವರಿ ತಿಂಗಳ ಇಪ್ಪತ್ತೈದನೇ ದಿನಾಂಕದಂದು ಘನತೆವೆತ್ತ ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2013ರ ಕರ್ನಾಟಕ ಅಧಿನಿಯಮ ಸಂಖ್ಯೆ: 20 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2013 ರ ಕರ್ನಾಟಕ ಅಧಿನಿಯಮ ಸಂಖ್ಯೆ: 20**

(2013ರ ಫೆಬ್ರವರಿ ಮಾಹೆಯ ಇಪ್ಪತ್ತೇಳನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ದಯಾನಂದ ಸಾಗರ ವಿಶ್ವವಿದ್ಯಾಲಯ ಅಧಿನಿಯಮ, 2012**

(2013ರ ಫೆಬ್ರವರಿ ಮಾಹೆಯ ಇಪ್ಪತ್ತೈದನೇ ದಿನಾಂಕದಂದು ರಾಜ್ಯಪಾಲರ ಅನುಮತಿಯನ್ನು ಪಡೆಯಲಾಗಿದೆ)

ಮಹಾತ್ಮಗಾಂಧಿ ವಿದ್ಯಾಪೀಠ ನ್ಯಾಸವು, ಜೀವ ವಿಜ್ಞಾನಗಳು, ಮಾಹಿತಿ ತಂತ್ರಜ್ಞಾನ, ಇಂಜಿನಿಯರಿಂಗ್‌ನ ಎಲ್ಲಾ ವಿಭಾಗಗಳು, ವಾಸ್ತುಶಿಲ್ಪ, ವ್ಯವಸ್ಥಾಪನೆ, ವೈದ್ಯಕೀಯ, ದಂತವೈದ್ಯಕೀಯ, ಔಷಧ ಶಾಸ್ತ್ರ, ಭೌತ ಚಿಕಿತ್ಸೆ, ನರ್ಸಿಂಗ್, ತತ್ಸಂಬಂಧ ಆರೋಗ್ಯ ವಿಷಯಗಳು ಒಳಗೊಂಡ ಆರೋಗ್ಯ ಪಾಲನಾ ಶಿಕ್ಷಣ ಮತ್ತು ಇವುಗಳಿಗೆ ಸಂಬಂಧಪಟ್ಟ ವಲಯಗಳು ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಪ್ರೋತ್ಸಾಹಿಸಲು ಮತ್ತು ಕೈಗೊಳ್ಳಲು ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದಕ್ಕಾಗಿ ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಮಹಾತ್ಮಗಾಂಧಿ ವಿದ್ಯಾಪೀಠ ನ್ಯಾಸವು, ಜೀವ ವಿಜ್ಞಾನಗಳು, ಮಾಹಿತಿ ತಂತ್ರಜ್ಞಾನ, ಇಂಜಿನಿಯರಿಂಗ್‌ನ ಎಲ್ಲಾ ವಿಭಾಗಗಳು, ವಾಸ್ತುಶಿಲ್ಪ, ವ್ಯವಸ್ಥಾಪನೆ, ವೈದ್ಯಕೀಯ, ದಂತವೈದ್ಯಕೀಯ, ಔಷಧ ಶಾಸ್ತ್ರ, ಭೌತ ಚಿಕಿತ್ಸೆ, ನರ್ಸಿಂಗ್, ತತ್ಸಂಬಂಧ ಆರೋಗ್ಯ ವಿಷಯಗಳು ಒಳಗೊಂಡ ಆರೋಗ್ಯ ಪಾಲನಾ ಶಿಕ್ಷಣ ಮತ್ತು ಇವುಗಳಿಗೆ ಸಂಬಂಧಪಟ್ಟ ವಲಯಗಳು ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಪ್ರೋತ್ಸಾಹಿಸಲು ಮತ್ತು ಕೈಗೊಳ್ಳಲು ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೂರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

## ಅಧ್ಯಾಯ – I

## ಪ್ರಾರಂಭಿಕ

**1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.**– (1) ಈ ಅಧಿನಿಯಮವನ್ನು ದಯಾನಂದ ಸಾಗರ ವಿಶ್ವವಿದ್ಯಾಲಯ ಅಧಿನಿಯಮ, 2012 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. ಪರಿಭಾಷೆಗಳು.**– ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,–

(ಎ) "ಶೈಕ್ಷಣಿಕ ಪರಿಷತ್ತು (ಅಕೆಡೆಮಿಕ್ ಕೌನ್ಸಿಲ್)" ಎಂದರೆ, 25ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿಸಲಾದ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು;

(ಬಿ) "ಕಾರ್ಯಸೂಚಿ ವಿಷಯಗಳು", ಎಂದರೆ, ಪರಿನಿಯಮಗಳಲ್ಲಿ ಹೆಸರಿಸಬಹುದಾದ ಮತ್ತು ಒಂದು ಸಭೆಯಲ್ಲಿ ಆ ವಿಷಯಗಳನ್ನು ಮತ್ತು ಕಲಾಪಗಳನ್ನು ಅನುಮೋದಿಸಬಹುದೆಂದು ತಮ್ಮ ಸಮ್ಮತಿ ಸೂಚಿಸಿ ಕುಲಾಧಿಪತಿಯವರು ಮುಂಚಿತವಾಗಿಯೇ ಲಿಖಿತ ಅನುಮೋದನೆಯನ್ನು ಕೊಟ್ಟಿದ್ದಾಗ ಮಾತ್ರವೇ ಸಂದರ್ಭಾನುಸಾರ ಪ್ರಬಂಧಕರ ಮಂಡಳಿ ಅಥವಾ ವ್ಯವಸ್ಥಾಪನಾ ಮಂಡಳಿ ಅಥವಾ ಯಾವುದೇ ಸಮಿತಿಯವರು ಕಾರ್ಯಸೂಚಿಯಲ್ಲಿ ಸೇರಿಸಬಹುದಾದ ಅಥವಾ ಸಭೆಯಲ್ಲಿ ಚರ್ಚೆಗೆ ತೆಗೆದುಕೊಂಡು ನಿರ್ಣಯವನ್ನು ಕೊಡಬಹುದಾದ ಎಲ್ಲಾ ವಿಷಯಗಳು ಮತ್ತು ಕಲಾಪಗಳು;

(ಸಿ) "ಪ್ರಬಂಧಕರ ಮಂಡಳಿ" ಎಂದರೆ, 23ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಪ್ರಬಂಧಕರ ಮಂಡಳಿ;

(ಡಿ) "ವ್ಯವಸ್ಥಾಪನಾ ಮಂಡಳಿ" ಎಂದರೆ, 24ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಆಡಳಿತ ಮಂಡಳಿ;

(ಇ) "ಕುಲಾಧಿಪತಿ", "ಕುಲಪತಿ", "ಸಹಕುಲಪತಿ" ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ ಮತ್ತು ಸಹಕುಲಪತಿ;

(ಎಫ್) "ಕ್ಯಾಂಪಸ್" ಎಂದರೆ, ಅದು ಎಲ್ಲಾದರೂ ಇರಲಿ ವಿಶ್ವವಿದ್ಯಾಲಯವು ಸ್ಥಾಪಿಸಿದ, ನಿರ್ವಹಿಸುವ ಒಂದು ಕ್ಯಾಂಪಸ್;

(ಜಿ) "ಸಮಿತಿಗಳು" ಎಂದರೆ, ಈ ಅಧಿನಿಯಮದಡಿಯಲ್ಲಿ ರೂಪಿಸಲಾದ ಸಮಿತಿಗಳು ಅಥವಾ ಸಂದರ್ಭಾನುಸಾರವಾಗಿ ವಿಶ್ವವಿದ್ಯಾಲಯದ ವಿವಿಧ ಕಾರ್ಯಕರ್ತರು ರಚಿಸಿರುವ ಸಮಿತಿಗಳು ಮತ್ತು ಅದರಲ್ಲಿ ನಾಮನಿರ್ದೇಶನ ಸಮಿತಿ, ಹಣಕಾಸು ಸಮಿತಿ ಮತ್ತು ಅಂಥ ಇತರ ಸಮಿತಿಗಳು ಒಳಗೊಳ್ಳುತ್ತವೆ;

(ಎಚ್) "ಘಟಕ ಕಾಲೇಜು" ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುತ್ತಿರುವ ಒಂದು ಕಾಲೇಜು ಅಥವಾ ಸಂಸ್ಥೆ;

(ಐ) "ಹಣಕಾಸು ಸಮಿತಿ" ಎಂದರೆ, 27ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಹಣಕಾಸು ಸಮಿತಿ;

(ಜೆ) "ಸರ್ಕಾರ" ಎಂದರೆ, ಕರ್ನಾಟಕ ಸರ್ಕಾರ;

(ಕೆ) "ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳು" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು, ಭಾರತೀಯ ವೈದ್ಯಕೀಯ ಪರಿಷತ್ತು, ಭಾರತೀಯ ಔಷಧ ವಿಜ್ಞಾನ ಪರಿಷತ್ತು, ಭಾರತೀಯ ಕೃಷಿ ಸಂಶೋಧನಾ ಪರಿಷತ್ತು, ರಾಷ್ಟ್ರೀಯ ಮೌಲ್ಯಮಾಪನ ಮತ್ತು ಅಧಿಮಾನ್ಯತಾ ಪರಿಷತ್ತು, ರಾಷ್ಟ್ರೀಯ ಬೋಧಕ ಶಿಕ್ಷಣ ಪರಿಷತ್ತು, ದೂರಶಿಕ್ಷಣ ಪರಿಷತ್ತು, ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಪರಿಷತ್ತುಗಳಂಥವುಗಳು, ಉನ್ನತ ಶಿಕ್ಷಣದಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುವಂತೆ ನೋಡಿಕೊಳ್ಳುವುದಕ್ಕಾಗಿ ಹಾಗೂ ಗುಣಮಟ್ಟಗಳು ಮತ್ತು ಷರತ್ತುಗಳನ್ನು

ವಿಧಿಸುವುದಕ್ಕಾಗಿ, ಕೇಂದ್ರ ಸರ್ಕಾರವು ಸ್ಥಾಪಿಸಿರುವ ಒಂದು ಸಂಸ್ಥೆ ಮತ್ತು ಇದರಲ್ಲಿ ಸರ್ಕಾರವೂ ಸೇರಿರುತ್ತದೆ;

(ಎಲ್) "ನಿಯಮಿಸಲಾದುದು" ಎಂದರೆ, ಈ ಅಧಿನಿಯಮದಡಿಯಲ್ಲಿ ಸರ್ಕಾರವು ರಚಿಸಲಾದ ನಿಯಮಗಳ ಮೂಲಕ ನಿಯಮಿಸಲಾದುದು;

(ಎಂ) "ಒಂದು ಘಟಕ ಕಾಲೇಜಿಗೆ ಸಂಬಂಧಪಟ್ಟಂತೆ ಪ್ರಾಂಶುಪಾಲರು" ಎಂದರೆ, ಘಟಕ ಕಾಲೇಜಿನ ಮುಖ್ಯಸ್ಥರು ಮತ್ತು ಪ್ರಾಂಶುಪಾಲರು ಇಲ್ಲದಿದ್ದಲ್ಲಿ ಅಥವಾ ನೇಮಕವಾದ ಪ್ರಾಂಶುಪಾಲರ ಗೈರುಹಾಜರಿಯಲ್ಲಿ, ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ತಾತ್ಕಾಲಿಕವಾಗಿ ನೇಮಕಗೊಂಡಿರುವ ಉಪಪ್ರಾಂಶುಪಾಲರು ಅಥವಾ ಯಾವೊಬ್ಬ ಇತರ ವ್ಯಕ್ತಿಯೂ ಇದರಲ್ಲಿ ಒಳಗೊಳ್ಳುತ್ತಾರೆ;

(ಎನ್) "ಕುಲಸಚಿವರು" ಎಂದರೆ, ವಿಶ್ವವಿದ್ಯಾಲಯದ ಕುಲಸಚಿವರು;

(ಒ) "ಪ್ರಾದೇಶಿಕ ಕೇಂದ್ರ" ಎಂದರೆ, ಯಾವುದೇ ಪ್ರದೇಶದಲ್ಲಿನ ಅಧ್ಯಯನ ಕೇಂದ್ರಗಳ ಕಾರ್ಯವನ್ನು ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ಮಾಡುವ ಉದ್ದೇಶಕ್ಕಾಗಿ ಮತ್ತು ಅಂಥ ಕೇಂದ್ರಕ್ಕೆ ವ್ಯವಸ್ಥಾಪನಾ ಮಂಡಳಿಯು ವಹಿಸಿಕೊಡಬಹುದಾದ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸುವುದಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಅಥವಾ ನಿರ್ವಹಿಸಿಕೊಂಡುಬರುವ ಒಂದು ಕೇಂದ್ರ;

(ಪಿ) ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ "ಪ್ರಾಯೋಜಕ ಪ್ರಾಧಿಕಾರ" ಅಥವಾ "ಪ್ರಾಯೋಜಕ ಸಂಸ್ಥೆ" ಎಂದರೆ, ನ್ಯಾಸ;

(ಕ್ಯೂ) "ರಾಜ್ಯ" ಎಂದರೆ, ಕರ್ನಾಟಕ ರಾಜ್ಯ;

(ಆರ್) "ಪರಿನಿಯಮಗಳು" ಮತ್ತು "ವಿನಿಯಮಗಳು" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಅನುಕ್ರಮವಾಗಿ ವಿಶ್ವವಿದ್ಯಾಲಯದ ಪರಿನಿಯಮಗಳು ಮತ್ತು ವಿನಿಯಮಗಳು;

(ಎಸ್) "ಅಧ್ಯಯನ ಕೇಂದ್ರ" ಎಂದರೆ, ಶಿಕ್ಷಣದ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಅಗತ್ಯವಾದ ಬುದ್ಧಿವಾದ, ಸಲಹೆಗಳನ್ನು ನೀಡುವ ಅಥವಾ ಇತರ ಯಾವುದೇ ನೆರವನ್ನು ನೀಡುವ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಮತ್ತು ನಿರ್ವಹಿಸಿಕೊಂಡುಬಂದ ಒಂದು ಕೇಂದ್ರ;

(ಟಿ) "ಅಧ್ಯಾಪಕರು" ಎಂದರೆ, ಒಬ್ಬ ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಒಂದು ಘಟಕ ಕಾಲೇಜಿನಲ್ಲಿ ಬೋಧಿಸುವುದಕ್ಕೆ ಅಥವಾ ಸಂಶೋಧನೆ ನಡೆಸುವುದಕ್ಕೆ ಅಥವಾ ಸಂಶೋಧನೆಗೆ ಮಾರ್ಗದರ್ಶನ ನೀಡುವುದಕ್ಕೆ ನೇಮಕವಾದ ಅಂಥ ಇತರ ವ್ಯಕ್ತಿ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗವು ನಿಯಮಿಸಿದ ಗುಣಮಟ್ಟಗಳಿಗೆ ಅನುಸಾರವಾಗಿ ಇರುವ ಘಟಕ ಕಾಲೇಜಿನ ಪ್ರಾಂಶುಪಾಲರು ಇದರಲ್ಲಿ ಒಳಗೊಳ್ಳುತ್ತಾರೆ;

(ಯು) "ನ್ಯಾಸ" ಎಂದರೆ ಮಹಾತ್ಮಗಾಂಧಿ ವಿದ್ಯಾಪೀಠ ನ್ಯಾಸ;

(ವಿ) "ವಿಶ್ವವಿದ್ಯಾಲಯ ಅನುದಾನಗಳ ಆಯೋಗ" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) 4ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ಆಯೋಗ;

(ಡಬ್ಲ್ಯೂ) "ವಿಶ್ವವಿದ್ಯಾಲಯ" ಎಂದರೆ, ಈ ಅಧಿನಿಯಮದಡಿಯಲ್ಲಿ ಸ್ಥಾಪಿಸಿ ನಿಗಮಿತಗೊಳಿಸಲಾದ ದಯಾನಂದ ಸಾಗರ ವಿಶ್ವವಿದ್ಯಾಲಯ;

(ಎಕ್ಸ್) "ಸಂದರ್ಶಕರು" ಎಂದರೆ, 13ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ವಿಶ್ವವಿದ್ಯಾಲಯದ ಸಂದರ್ಶಕರು.

## ಅಧ್ಯಾಯ– II

## ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

**3. ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ.–** (1) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಹಕ್ಕನ್ನು ನ್ಯಾಸವು ಹೊಂದಿರತಕ್ಕದ್ದು.

(2) ನ್ಯಾಸವು ರಾಜ್ಯ ಸರ್ಕಾರಕ್ಕೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವವನ್ನು ಸಲ್ಲಿಸತಕ್ಕದ್ದು.

(3) ಈ ಮುಂದಿನ ವಿವರಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ನ್ಯಾಸದ ವಿವರಗಳೊಂದಿಗೆ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು;

(ii) ವಿಶ್ವವಿದ್ಯಾಲಯದ ವ್ಯಾಪ್ತಿ ಮತ್ತು ಸ್ಥಾನಮಾನ ಹಾಗೂ ಭೂಮಿಯ ಲಭ್ಯತೆ;

(iii) ಪ್ರಾರಂಭದ ದಿನಾಂಕದಿಂದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳಬೇಕೆಂದಿರುವ ಅಧ್ಯಯನ ಮತ್ತು ಸಂಶೋಧನಾ ಕಾರ್ಯಕ್ರಮಗಳ ಸ್ವರೂಪ ಮತ್ತು ಬಗೆಗಳು;

(iv) ಪ್ರಾರಂಭಿಸಬೇಕೆಂದು ಪ್ರಸ್ತಾಪಿಸಿರುವ ವ್ಯಾಸಂಗ ವಿಭಾಗಗಳು (ಫ್ಯಾಕಲ್ಟಿಗಳು), ಅಧ್ಯಯನ ಕ್ರಮಗಳು ಮತ್ತು ಸಂಶೋಧನೆಗಳ ಸ್ವರೂಪ;

(v) ಕಟ್ಟಡಗಳು, ಸಲಕರಣೆಗಳು ಮತ್ತು ರಚನಾ ಸೌಕರ್ಯಗಳನ್ನು ಒದಗಿಸುವಂಥ ಕ್ಯಾಂಪಸ್ ಅಭಿವೃದ್ಧಿ;

(vi) ಪ್ರಾರಂಭದ ದಿನಾಂಕದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಗಾಗಿ ಬಂಡವಾಳ ವೆಚ್ಚದ ಹಂತಗಳು;

(vii) ಬಾಬುವಾರು ಆವರ್ತಕ ವೆಚ್ಚ, ಆರ್ಥಿಕ ಮೂಲಗಳು ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ತಗಲುವ ಅಂದಾಜು ವೆಚ್ಚ;

(viii) ಸಂಪನ್ಮೂಲ ಸಂಗ್ರಹಣೆಗಾಗಿ ಯೋಜನೆ ಮತ್ತು ಅದಕ್ಕೆ ಬಂಡವಾಳದಿಂದ ತಗಲುವ ವೆಚ್ಚ ಹಾಗೂ ಪ್ರತಿಯೊಂದು ಮೂಲಕ್ಕೂ ಮರು ಸಂದಾಯ ಮಾಡುವ ರೀತಿ;

(ix) ವಿದ್ಯಾರ್ಥಿಗಳಿಂದ ಶುಲ್ಕ ವಸೂಲು ಮಾಡಿ ಆಂತರಿಕವಾಗಿ ನಿಧಿ ಸಂಗ್ರಹಿಸುವ ಯೋಜನೆ, ಸಲಹಾ ಸೇವೆ ಮತ್ತು ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಿಗೆ ಸಂಬಂಧಿಸಿದ ಇತರ ಚಟುವಟಿಕೆಗಳಿಂದ ನಿರೀಕ್ಷಿತ ವರಮಾನಗಳು ಮತ್ತು ಇತರ ನಿರೀಕ್ಷಿತ ವರಮಾನಗಳು;

(x) ಘಟಕವೊಂದಕ್ಕೆ ತಗಲುವ ವೆಚ್ಚದ ವಿವರಗಳು, ಆರ್ಥಿಕವಾಗಿ ದುರ್ಬಲವಾದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕ, ಉಚಿತ ಶಿಕ್ಷಣ (ಫ್ರಿಶಿಪ್) ಮತ್ತು ವಿದ್ಯಾರ್ಥಿ ವೇತನದಲ್ಲಿ ನೀಡುವ ರಿಯಾಯಿತಿ ಅಥವಾ ವಿನಾಯತಿಯ ಪರಿಮಿತಿಯ ವಿವರಗಳನ್ನು ಮತ್ತು ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳಿಗೆ ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳು ಪ್ರಾಯೋಜಿಸಿದ ವಿದ್ಯಾರ್ಥಿಗಳಿಗೆ ಮತ್ತು ಭಾರತವನ್ನುಳಿದು ಇತರ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ವಿಧಿಸತಕ್ಕ ಶುಲ್ಕದ ದರಗಳು ಬೇರೆ ಬೇರೆ ಇದ್ದಲ್ಲಿ ಅವುಗಳನ್ನು ಸೂಚಿಸುವ ಶುಲ್ಕ ರಚನೆಯ ವಿವರಗಳು;

(xi) ಸಂಬಂಧಪಟ್ಟ ವಿದ್ಯಾ ವಿಭಾಗದಲ್ಲಿ ಎಷ್ಟು ವರ್ಷಗಳ ಅನುಭವ ಮತ್ತು ಪರಿಣಿತಿಯನ್ನು ನ್ಯಾಸವು ದೊರಕಿಸಿಕೊಡಲಿದೆ ಹಾಗೂ ಅದರ ಹಣಕಾಸಿನ ಸಂಪನ್ಮೂಲಗಳು;

(xii) ವಿಶ್ವವಿದ್ಯಾಲಯದಲ್ಲಿರುವ ಅಧ್ಯಯನ ಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕಾಗಿ ಇರುವ ವ್ಯವಸ್ಥೆ;

(xiii) ವಿಶ್ವವಿದ್ಯಾಲಯವು ಸ್ಥಾಪನೆಯಾಗುವುದಕ್ಕೆ ಮೊದಲು ನೆರವೇರಿಸಬೇಕೆಂದು ರಾಜ್ಯ ಸರ್ಕಾರವು ಅಗತ್ಯಪಡಿಸಬಹುದಾದ ಅಂಥ ಇತರ ಷರತ್ತುಗಳ ನೆರವೇರಿಕೆಯ ಹಂತ.

(4) ಸ್ವೀಕರಿಸಿದ ಪ್ರಸ್ತಾವಗಳನ್ನು ಪರೀಕ್ಷಿಸಲು ರಾಜ್ಯ ಸರ್ಕಾರವು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಪದನಿಮಿತ್ತ ಸದಸ್ಯರಾದ ಮೂರು ಸದಸ್ಯರುಗಳನ್ನು ಒಳಗೊಂಡ ಒಂದು ಪರಿಶೋಧನಾ ಸಮಿತಿಯನ್ನು ರಚಿಸತಕ್ಕದ್ದು ಮತ್ತು ಅದು ರಾಜ್ಯ ಸರ್ಕಾರಕ್ಕೆ ಶಿಫಾರಸ್ಸನ್ನು ಮಾಡತಕ್ಕದ್ದು.

**4. ವಿಶ್ವವಿದ್ಯಾಲಯದ ಸ್ಥಾಪನೆ.–** (1) ರಾಜ್ಯ ಸರ್ಕಾರವು ಪರಿಶೋಧನಾ ಸಮಿತಿಯು ಮಾಡಿದ ಶಿಫಾರಸ್ಸುಗಳನ್ನು ಪರಿಶೀಲಿಸಿದ ತರುವಾಯ ಮತ್ತು ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ,–

(i) ನ್ಯಾಸವು ಸಾಕಷ್ಟು ಮೂಲ ಸೌಕರ್ಯದೊಂದಿಗೆ ವಿಶ್ವವಿದ್ಯಾಲಯವೊಂದನ್ನು ನಡೆಸಲು ಸಮರ್ಥವಾಗಿದೆ ಎಂದು ಅದು ಮನಗಂಡರೆ;

(ii) ಪ್ರದೇಶಕ್ಕನುಸಾರವಾಗಿ ಕೆಳಗೆ ನಿರ್ದಿಷ್ಟ ಪಡಿಸಿದ ವ್ಯಾಪ್ತಿಗೆ ಭೂಮಿಯ ಒಡೆಯತನವನ್ನು ಹೊಂದಿರತಕ್ಕದ್ದು, ಎಂದರೆ:–

(ಎ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯೊಳಗಿದ್ದರೆ ಇಪ್ಪತ್ತೈದು ಎಕರೆಗಳು;

(ಬಿ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯಿಂದ ಹೊರಗೆ ಇದ್ದು ಆದರೆ ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಪ್ರದೇಶದ ಒಳಗೆ ಇದ್ದರೆ ನಲವತ್ತು ಎಕರೆಗಳು;

(ಸಿ) ಭೂಮಿಯು (ಎ) ಮತ್ತು (ಬಿ) ಖಂಡಗಳಲ್ಲಿ ನಿರ್ದಿಷ್ಟಪಡಿಸಿದ ಸ್ಥಳಗಳನ್ನು ಹೊರತುಪಡಿಸಿದ್ದರೆ ಅರವತ್ತು ಎಕರೆಗಳಿಗಿಂತ ಕಡಿಮೆ ಇರತಕ್ಕದ್ದಲ್ಲ.

ಮೇಲೆ ನಿರ್ದಿಷ್ಟಪಡಿಸಿದ ಭೂಮಿಯು ಏಕ ಘಟಕ(ಸಿಂಗಲ್ ಬ್ಲಾಕ್) ದಲ್ಲಿರತಕ್ಕದ್ದು ಮತ್ತು ಇದು ಸಂಬಂಧಪಟ್ಟ ನ್ಯಾಸ /ಪ್ರತಿಷ್ಠಾನ/ ಸಂಸ್ಥೆ/ ವಿಶ್ವವಿದ್ಯಾಲಯದ ಹೆಸರಿನಲ್ಲಿರತಕ್ಕದ್ದು. 3ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ಅಗತ್ಯಪಡಿಸಲಾದಂತೆ ಒದಗಿಸಿದ ವಿವರಗಳ ಆಧಾರದ ಮೇಲೆ ಸರ್ಕಾರವು 47ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಬೇಕೆಂದು ನ್ಯಾಸಕ್ಕೆ ನಿರ್ದೇಶನ ನೀಡಬಹುದು.

(2) ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಸ್ಥಾಪನೆಯ ತರುವಾಯ, ರಾಜ್ಯ ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, "ದಯಾನಂದ ಸಾಗರ ವಿಶ್ವವಿದ್ಯಾಲಯ" ಎಂಬ ಹೆಸರಿನ ಏಕಾತ್ಮಕ ಸ್ವರೂಪದ ಒಂದು ವಿಶ್ವವಿದ್ಯಾಲಯವನ್ನು ರಾಜ್ಯದಲ್ಲಿ ಸ್ಥಾಪಿಸುವುದಕ್ಕೆ ಮಂಜೂರಾತಿಯನ್ನು ನೀಡಬಹುದು.

(3) ವಿಶ್ವವಿದ್ಯಾಲಯದ ಕೇಂದ್ರ ಕಾರ್ಯಸ್ಥಾನವು ಬೆಂಗಳೂರಿನಲ್ಲಿ ಇರತಕ್ಕದ್ದು. ವಿಶ್ವವಿದ್ಯಾಲಯವು ತನ್ನ ಕ್ಯಾಂಪಸ್ಸುಗಳನ್ನು ಅಥವಾ ಪ್ರಾದೇಶಿಕ ಕೇಂದ್ರಗಳನ್ನು, ಅಧ್ಯಯನ ಕೇಂದ್ರಗಳನ್ನು ಕರ್ನಾಟಕದ ಯಾವುದೇ ಭಾಗದಲ್ಲಿ ಹೊಂದಿರತಕ್ಕದ್ದು ಮತ್ತು ಆ ಬಗ್ಗೆ ರಾಜ್ಯ ಸರ್ಕಾರದ ಪೂರ್ವಾನುಮತಿಯನ್ನು ಪಡೆದುಕೊಳ್ಳುವುದಕ್ಕೊಳಪಟ್ಟು ಹಾಗೂ ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗನುಸಾರವಾಗಿ ಹೊಂದಿರತಕ್ಕದ್ದು.

(4) ಮೊದಲ ಕುಲಾಧಿಪತಿಯವರು, ಮೊದಲ ಕುಲಪತಿಯವರು, ಪ್ರಬಂಧಕ ಮಂಡಳಿಯ ಮೊದಲ ಸದಸ್ಯರುಗಳು, ವ್ಯವಸ್ಥಾಪನಾ ಮಂಡಳಿಯ ಹಾಗೂ ಶೈಕ್ಷಣಿಕ ಪರಿಷತ್ತಿನ ಮೊದಲ ಸದಸ್ಯರುಗಳು ಮತ್ತು ಇನ್ನು ಮುಂದೆ, ಅಂಥ ಅಧಿಕಾರಿಗಳು ಅಥವಾ ಸದಸ್ಯರುಗಳಾಗಬಹುದಾದಂಥ ಎಲ್ಲಾ ವ್ಯಕ್ತಿಗಳು, ಅಂಥ ಪದ ಅಥವಾ ಸದಸ್ಯತ್ವವನ್ನು ಹೊಂದಿರುವುದು ಮುಂದುವರೆಯುವವರೆಗೆ, ಒಂದು ನಿಗಮಿತ ನಿಕಾಯವನ್ನು ರಚಿಸತಕ್ಕದ್ದು ಮತ್ತು ಅದು ವಿಶ್ವವಿದ್ಯಾಲಯದ ಹೆಸರಿನಲ್ಲಿ ದಾವೆ ಹೂಡಬಹುದು ಮತ್ತು ದಾವೆಗೊಳಗಾಗಬಹುದು.

(5) (2)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯವು ಸ್ಥಾಪನೆಗೆ ಮಂಜೂರಾತಿಯಾದ ಮೇಲೆ, ವಿಶ್ವವಿದ್ಯಾಲಯದ ಉದ್ದೇಶಕ್ಕಾಗಿ, ನ್ಯಾಸವು ಆರ್ಜಿಸಿದ, ಸೃಜಿಸಿದ, ಏರ್ಪಾಟು ಮಾಡಿಕೊಂಡ ಅಥವಾ ಕಟ್ಟಲ್ಪಟ್ಟ ಭೂಮಿ ಮತ್ತು ಇತರ ಸ್ಥಿರ ಮತ್ತು ಚರ ಸ್ವತ್ತು, ವಿಶ್ವವಿದ್ಯಾಲಯದಲ್ಲಿ ನಿಹಿತವಾಗಿರತಕ್ಕದ್ದು.

(6) ವಿಶ್ವವಿದ್ಯಾಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದ ಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂಥ ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

(7) ವಿಶ್ವವಿದ್ಯಾಲಯದಲ್ಲಿನ ಭೂಮಿ, ಕಟ್ಟಡ ಮತ್ತು ಇತರ ಸ್ವತ್ತುಗಳನ್ನು ವಿಶ್ವವಿದ್ಯಾಲಯದ ಉದ್ದೇಶಗಳಿಗೆ ಆನುಷಂಗಿಕವಾಗಿರುವುದನ್ನು ಹೊರತುಪಡಿಸಿ ಇತರ ಯಾವುದೇ ಉದ್ದೇಶಕ್ಕಾಗಿ ಬಳಸತಕ್ಕದ್ದಲ್ಲ.

**5. ಅನುದಾನಗಳು ಮತ್ತು ಹಣಕಾಸು ನೆರವು.**– ವಿಶ್ವವಿದ್ಯಾಲಯವು ಸ್ವಂತ ಧನಮೂಲ ಉಳ್ಳದ್ದಾಗಿರತಕ್ಕದ್ದು ಮತ್ತು ರಾಜ್ಯದಿಂದ ಅಥವಾ ರಾಜ್ಯದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಇತರ ಸಂಸ್ಥೆ ಅಥವಾ ನಿಗಮದಿಂದ ಯಾವುದೇ ನಿರ್ವಹಣಾ ಸಹಾಯ ಅನುದಾನ ಅಥವಾ ಯಾವುದೇ ಹಣಕಾಸು ನೆರವನ್ನು ಹಕ್ಕಿನಿಂದ ಕೇಳತಕ್ಕದ್ದಲ್ಲ ಅಥವಾ ಅದನ್ನು ಪಡೆಯಲು ಹಕ್ಕನ್ನು ಹೊಂದಿರತಕ್ಕದ್ದಲ್ಲ:

ಪರಂತು, ರಾಜ್ಯವು,–

(ಎ) ಇತರ ರಾಜ್ಯ ಸರ್ಕಾರದ ಸಂಘಟನೆಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿರುವಂಥದ್ದೇ ಸಂಶೋಧನೆ, ಅಭಿವೃದ್ಧಿ ಮತ್ತಿತರ ಚಟುವಟಿಕೆಗಳಿಗಾಗಿ; ಅಥವಾ

(ಬಿ) ಸರ್ಕಾರದಿಂದ ನೆರವನ್ನು ಪಡೆಯುವ ಯಾವುದೇ ನಿರ್ದಿಷ್ಟ ಸಂಶೋಧನೆ ಅಥವಾ ಕಾರ್ಯಕ್ರಮಗಳಿಗಾಗಿ; ಮತ್ತು

(ಸಿ) ರಾಜ್ಯ ಕಾರ್ಯನೀತಿಯ ಬದಲಾವಣೆಗೆ ಒಳಪಟ್ಟು ಅಥವಾ ಅನ್ಯಥಾ ಇದೇ ಬಗೆಯ ವಿಶ್ವವಿದ್ಯಾಲಯಗಳಿಗಾಗಿ ಅಥವಾ ಅವುಗಳ ಪ್ರಯೋಜನಕ್ಕಾಗಿ,

–ಅನುದಾನದ ಮೂಲಕ ಅಥವಾ ಅನ್ಯಥಾ ಹಣಕಾಸು ಬೆಂಬಲವನ್ನು ಒದಗಿಸಬಹುದು:

ಮತ್ತು ಪರಂತು, ವಿಶ್ವವಿದ್ಯಾಲಯವು, ಯಾವುದೇ ಇತರ ಮೂಲದಿಂದ ಯಾವುದೇ ಆರ್ಥಿಕ ನೆರವನ್ನು ಸ್ವೀಕರಿಸಬಹುದು.

**6. ಘಟಕ ಕಾಲೇಜು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಅಥವಾ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದಕ್ಕೆ ಅಧಿಕಾರ.**- ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಐದು ವರ್ಷಗಳನ್ನು ಪೂರ್ಣಗೊಳಿಸಿದ ನಂತರ, ವಿಶ್ವವಿದ್ಯಾಲಯ ಅನುದಾನ ಆಯೋಗದ ಮತ್ತು ಇತರ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ಗುಣಮಟ್ಟಗಳಿಗೆ ಒಳಪಟ್ಟು, ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ, ವಿಶ್ವವಿದ್ಯಾಲಯವು, ರಾಜ್ಯದಲ್ಲಿ ತನಗೆ ಸೂಕ್ತವೆನಿಸುವಂಥ ಸ್ಥಳಗಳಲ್ಲಿ ಘಟಕ ಕಾಲೇಜುಗಳು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದಿರಬಹುದು.

**7. ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು.**- ವಿಶ್ವವಿದ್ಯಾಲಯವು, ತನ್ನ ಭವಿಷ್ಯದ್‌ದೃಷ್ಟಿ ಮತ್ತು ಧ್ಯೇಯೋದ್ದೇಶಗಳನ್ನು ಸಾಧಿಸಲು ಈ ಮುಂದಿನ ವಿಸ್ತೃತ ಕಾರ್ಯತಂತ್ರಗಳನ್ನು ಕೈಗೊಳ್ಳಬಹುದು.-

(i) ತಾಂತ್ರಿಕ ಶಿಕ್ಷಣ, ಹಣಕಾಸು, ವ್ಯವಸ್ಥಾಪನೆ, ಬೋಧನೆ-ಕಲಿಕೆ, ವೃತ್ತಿ ಶಿಕ್ಷಣದಲ್ಲಿಯ ತಾಂತ್ರಿಕತೆ, ವೈದ್ಯಕೀಯ, ದಂತವೈದ್ಯಕೀಯ, ಔಷಧಶಾಸ್ತ್ರ, ನರ್ಸಿಂಗ್, ತತ್ಸಂಬಂಧಿ ಆರೋಗ್ಯ ವಿಷಯಗಳನ್ನು ಒಳಗೊಂಡ ಆರೋಗ್ಯ ಪಾಲನೆಯಂಥ ಕ್ಷೇತ್ರಗಳಲ್ಲಿ ಮತ್ತು ಅಭಿವೃದ್ಧಿ ಹೊಂದುತ್ತಿರುವ ಇತರೆ ಸಂಬಂಧಪಟ್ಟ ಕ್ಷೇತ್ರಗಳನ್ನು ಒಳಗೊಂಡಂತೆ ವಿವಿಧ ವಿಷಯಗಳಲ್ಲಿ ಶಿಕ್ಷಣ, ಬೋಧನೆ, ತರಬೇತಿ, ಸಂಶೋಧನೆ, ಸಮಾಲೋಚನೆ ಮತ್ತು ಅಭಿವೃದ್ಧಿಗೆ ಅವಕಾಶವನ್ನು ಕಲ್ಪಿಸುವುದು ಮತ್ತು ಈ ಕ್ಷೇತ್ರಗಳಲ್ಲಿ ಸಂಶೋಧನೆ ನಡೆಸಲು, ಪ್ರಗತಿಯನ್ನು ಸಾಧಿಸಲು ಮತ್ತು ಜ್ಞಾನವನ್ನು ಪ್ರಸಾರ ಮಾಡಲು ಉಪಬಂಧಗಳನ್ನು ಕಲ್ಪಿಸುವುದು;

(ii) ಉನ್ನತ ಹಾಗೂ ವೃತ್ತಿ ಶಿಕ್ಷಣ ಕ್ಷೇತ್ರಗಳಲ್ಲಿನ ಬೋಧಕರಿಗಾಗಿ, ಸರ್ಕಾರದಲ್ಲಿ, ಸಾರ್ವಜನಿಕ ಮತ್ತು ಖಾಸಗಿ ವಲಯಗಳಲ್ಲಿ ಕಾರ್ಯ ನಿರ್ವಹಿಸುವ ಆಡಳಿತಗಾರರು ಮತ್ತು ವೃತ್ತಿಪರರಿಗಾಗಿ ಹಾಗೂ ಇತರ ವ್ಯವಸ್ಥೆಗಳಲ್ಲಿನ ಅಭಿವೃದ್ಧಿಶೀಲ ವೃತ್ತಿಪರರಿಗಾಗಿ ಉನ್ನತ ಗುಣಮಟ್ಟದ ತರಬೇತಿ, ಸಾಮರ್ಥ್ಯ ನಿರ್ಮಾಣ ಮತ್ತು ಅಭಿವೃದ್ಧಿ ಪದ್ಧತಿಗಳನ್ನು ವಿನ್ಯಾಸಗೊಳಿಸುವುದು ಮತ್ತು ನೀಡುವುದು;

(iii) ಗುಣಮಟ್ಟದ ಶಿಕ್ಷಣಕ್ಕೆ ಕೊಡುಗೆಯನ್ನು ನೀಡುವುದಕ್ಕಾಗಿ ಸಂಶೋಧನಾ ಕೇಂದ್ರಗಳನ್ನು ಅಭಿವೃದ್ಧಿ ಪಡಿಸುವುದು;

(iv) ವಿಶ್ವವಿದ್ಯಾಲಯ ಅನುದಾನಗಳ ಆಯೋಗದ ಗುಣಮಟ್ಟಗಳಿಗೆ ಅನುಸಾರವಾಗಿ ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ, ಕರ್ನಾಟಕದಲ್ಲಿನ ವಿವಿಧ ಸ್ಥಳಗಳಲ್ಲಿ ಕ್ಯಾಂಪಸ್ಸುಗಳನ್ನು ಸ್ಥಾಪಿಸುವುದು ಮತ್ತು ಅಧ್ಯಯನ ಕೇಂದ್ರಗಳನ್ನು, ಘಟಕ ಕಾಲೇಜುಗಳನ್ನು ಮತ್ತು ಪ್ರಾದೇಶಿಕ ಕೇಂದ್ರಗಳನ್ನು ಹೊಂದುವುದು ಮತ್ತು ತಾಂತ್ರಿಕ ಮತ್ತು ವೃತ್ತಿಪರ ಶಿಕ್ಷಣ ಮತ್ತು ಸಾಮಾಜಿಕ ಹಾಗೂ ಮಾನವ ಅಭಿವೃದ್ಧಿಯಲ್ಲಿಯ ಶೈಕ್ಷಣಿಕ ಬದಲಾವಣೆಗಳ ಬಗ್ಗೆ ಅರಿವನ್ನುಂಟು ಮಾಡುವುದು ಮತ್ತು ಆ ಬಗ್ಗೆ ಕೊಡುಗೆಯನ್ನು ನೀಡುವುದು.

(v) ನಿರ್ಧರಣೆಯ ವಿವಿಧ ವಿಧಾನಗಳ ಮೂಲಕ ಮೌಲ್ಯಮಾಪನ ಮಾಡಿದ ಶೈಕ್ಷಣಿಕ ಕಾರ್ಯವನ್ನು ಅನುಸಾರವಾಗಿ ಯಶಸ್ವಿಯಾಗಿ ಪೂರ್ಣಗೊಳಿಸಿದುದರ ಆಧಾರದ ಮೇಲೆ ಪದವಿಗಳನ್ನು, ಡಿಪ್ಲೋಮೊಗಳನ್ನು, ಪ್ರಮಾಣಪತ್ರಗಳನ್ನು ಮತ್ತು ಯಶೋಪತ್ರ ಪ್ರದಾನದಂಥ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(vi) ವಿದ್ಯಾರ್ಥಿಗಳಿಗೆ, ಬೋಧಕ ಸದಸ್ಯರಿಗೆ ಮತ್ತು ಇತರರಿಗೆ ನಿರ್ದಿಷ್ಟ ಶೈಕ್ಷಣಿಕ ಮತ್ತು ಸಂಶೋಧನಾ ಕಾರ್ಯಕ್ರಮಗಳು, ತರಬೇತಿ ಕಾರ್ಯಕ್ರಮಗಳು ಮತ್ತು ವಿಚಾರ ವಿನಿಯಮಯ ಕಾರ್ಯಕ್ರಮಗಳನ್ನು ಪರಿಕಲ್ಪಿಸಲು, ವಿನ್ಯಾಸಗೊಳಿಸಲು, ಅಭಿವೃದ್ಧಿಪಡಿಸಲು ಮತ್ತು ನೀಡಲು ಯಾವುವೇ ಇತರ ವಿಶ್ವವಿದ್ಯಾಲಯಗಳು ಸಂಶೋಧನಾ ಸಂಸ್ಥೆಗಳು, ಲಾಭರಹಿತ ಸಂಘಟನೆಗಳು, ಕೈಗಾರಿಕಾ ಸಂಘ, ವೃತ್ತಿಪರ ಸಂಘಗಳು ಅಥವಾ ಇತರ ಸಂಘಗಳೊಂದಿಗೆ ಸಹಯೋಗವನ್ನು ಕಲ್ಪಿಸುವುದು;

(vii) ವಿಚಾರ ಸಂಕೀರ್ಣಗಳು, ಸಮ್ಮೇಳನಗಳು, ಕಾರ್ಯಾಂಗ ಶಿಕ್ಷಣ ಕಾರ್ಯಕ್ರಮಗಳು, ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳು, ಪ್ರಕಟಣೆಗಳು ಮತ್ತು ತರಬೇತಿ ಕಾರ್ಯಕ್ರಮಗಳು ಮತ್ತು ಕಾರ್ಯಸೂಚಿಗಳ ಮೂಲಕ ಜ್ಞಾನ ಪ್ರಸಾರ ಮಾಡುವುದು ಮತ್ತು ಶಿಕ್ಷಣ ಮತ್ತು ತತ್ಸಂಬಂಧಿತ ಅಭಿವೃದ್ಧಿ ಕ್ಷೇತ್ರಗಳ ವಿಷಯಗಳ ಬಗ್ಗೆ ಸಾರ್ವಜನಿಕ ಚರ್ಚೆಯನ್ನು ಏರ್ಪಡಿಸುವುದು;

(viii) ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಇತರ ಯಾವುವೇ ಉತ್ತಮ ಗುಣಮಟ್ಟದ ಸಂಸ್ಥೆಗಳೊಂದಿಗೆ ಸಹಭಾಗಿಗಳಾಗಿ ವಿಶ್ವವಿದ್ಯಾಲಯದ ಬೋಧಕ ವೃಂದ (ಫ್ಯಾಕಲ್ಟಿ) ಮತ್ತು ಸಂಶೋಧಕರ ಅಭಿವೃದ್ಧಿ ಮತ್ತು ತರಬೇತಿಗಾಗಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು;

(ix) ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುದೇ ಸಂಸ್ಥೆಯೊಂದಿಗೆ ಜೊತೆಗೂಡಿ ಸಂಶೋಧನೆಯನ್ನು ನಡೆಸುವುದು ಮತ್ತು ಸಮರ್ಥನೆಗೊಳಿಸುವುದು.

(x) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದಕ್ಕಾಗಿ ಮತ್ತು ಉತ್ತೇಜಿಸುವುದಕ್ಕಾಗಿ ಅವಶ್ಯಕವಾದ ಮತ್ತು ಯುಕ್ತವಾದ ಕ್ರಮಗಳನ್ನು ಕೈಗೊಳ್ಳುವುದು;

(xi) ಶಿಕ್ಷಣ ಮತ್ತು ಇತರ ಅಭಿವೃದ್ಧಿ ವಲಯಗಳನ್ನು ವಿಸ್ತರಿಸುವುದಕ್ಕಾಗಿ ಸರ್ಕಾರವು ಅನುಮೋದಿಸಬಹುದಾದಂತೆ ಯಾವುವೇ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದು.

**8. ವಿಶ್ವವಿದ್ಯಾಲಯದ ಅಧಿಕಾರಗಳು.–** ವಿಶ್ವವಿದ್ಯಾಲಯವು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗೆ ಅನುಸಾರವಾಗಿ ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿರ್ಧರಿಸಬಹುದಾದಂತೆ ಕ್ಯಾಂಪಸ್ಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಕರ್ನಾಟಕದಲ್ಲಿ ಸ್ಥಾಪಿಸುವುದು ಮತ್ತು ನಿರ್ವಹಿಸುವುದು;

(ii) ವಿಶ್ವವಿದ್ಯಾಲಯದ ಉದ್ದೇಶವನ್ನು ಕಾರ್ಯರೂಪಕ್ಕೆ ತರುವಲ್ಲಿ ಅಗತ್ಯವಾಗಬಹುದಾದ ಅಥವಾ ಕಾರ್ಯಸಾಧ್ಯವಾಗಬಹುದಾದ ಎಲ್ಲಾ ಅಂಥ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು;

(iii) ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಮತ್ತು ಷರತ್ತುಗಳಿಗೊಳಪಟ್ಟು ಪದವಿಗಳು ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರದಾನಮಾಡುವುದು;

(iv) ಪರಿನಿಯಮಗಳನ್ವಯ ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿ ವೇತನಗಳು ಮತ್ತು ಬಹುಮಾನಗಳು, ಅವಾರ್ಡುಗಳು, ಪಾರಿತೋಷಕಗಳು ಇತ್ಯಾದಿಗಳನ್ನು ಸ್ಥಾಪಿಸುವುದು ಮತ್ತು ನೀಡುವುದು;

(v) ಪರಿನಿಯಮಗಳಲ್ಲಿ ಅಥವಾ ಸಂದರ್ಭಾನುಸಾರವಾಗಿ ನಿಯಮಗಳಲ್ಲಿ ನಿಗದಿಪಡಿಸಬಹುದಾದ ಅಂಥ ಶುಲ್ಕಗಳು, ಬಿಲ್ಲುಗಳು, ಖರೀದಿ ಪಟ್ಟಿಗಳನ್ನು ಕೇಳಿಪಡೆದುಕೊಳ್ಳುವುದು ಮತ್ತು ಸ್ವೀಕರಿಸುವುದು ಹಾಗೂ ಚಾರ್ಜುಗಳನ್ನು ವಸೂಲು ಮಾಡುವುದು;

(vi) ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಪಠ್ಯೇತರ ಚಟುವಟಿಕೆಗಳಿಗೆ ಅವಕಾಶಗಳನ್ನು ಕಲ್ಪಿಸುವುದು;

(vii) ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಕ್ಯಾಂಪಸುಗಳ, ಪ್ರಾದೇಶಿಕ ಕೇಂದ್ರಗಳ, ಅಧ್ಯಯನ ಕೇಂದ್ರಗಳ ಫ್ಯಾಕಲ್ಟಿ, ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವುದು;

(viii) ವಿಶ್ವವಿದ್ಯಾಲಯದ ಅಥವಾ ಒಂದು ಘಟಕ ಕಾಲೇಜಿನ ಅಥವಾ ಕ್ಯಾಂಪಸ್ಸಿನ, ಪ್ರಾದೇಶಿಕ ಕೇಂದ್ರದ, ಅಧ್ಯಯನ ಕೇಂದ್ರದ ಉದ್ದೇಶಕ್ಕಾಗಿ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದಿರುವ, ಯಾವುದೇ ರೀತಿಯ ಸ್ವಯಂ ದೇಣಿಗೆಗಳು ಮತ್ತು ಕೊಡುಗೆಗಳನ್ನು ಸ್ವೀಕರಿಸುವುದು ಮತ್ತು ನ್ಯಾಸ ಮತ್ತು ದತ್ತಿ ಸ್ವತ್ತುಗಳೂ ಸೇರಿದಂತೆ, ಯಾವುದೇ ಚರ ಅಥವಾ ಸ್ಥಿರ ಸ್ವತ್ತನ್ನು ಆರ್ಜಿಸುವುದು, ಹೊಂದಿರುವುದು, ನಿರ್ವಹಿಸುವುದು, ನಡೆಸುವುದು ಮತ್ತು ಹಸ್ತಾಂತರ ಮಾಡುವುದು;

(ix) ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸುವುದು ಹಾಗೂ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ ವಿದ್ಯಾರ್ಥಿಗಳಿಗೆ ವಸತಿ ಸ್ಥಳಗಳನ್ನು ಗುರುತು ಮಾಡುವುದು;

(x) ವಸತಿಯ ಮೇಲ್ವಿಚಾರಣೆ ಮಾಡುವುದು ಮತ್ತು ನಿಯಂತ್ರಣ ಮಾಡುವುದು ಹಾಗೂ ವಿದ್ಯಾರ್ಥಿಗಳು ಮತ್ತು ಎಲ್ಲಾ ಪ್ರವರ್ಗಗಳ ಸಿಬ್ಬಂದಿಗಳಲ್ಲಿ ಶಿಸ್ತು ನಿಯಂತ್ರಣ ಮಾಡುವುದು ಮತ್ತು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ನಡತೆ ಸಂಹಿತೆಯನ್ನು ರೂಪಿಸುವುದೂ ಒಳಗೊಂಡಂತೆ, ಅಂಥ ಸಿಬ್ಬಂದಿಗಳ ಸೇವಾಷರತ್ತುಗಳನ್ನು ನಿರೂಪಿಸುವುದು;

2-7

(xi) ಶೈಕ್ಷಣಿಕ, ಆಡಳಿತಾತ್ಮಕ ಮತ್ತು ಬೆಂಬಲ ಸಿಬ್ಬಂದಿಯ ಹುದ್ದೆಗಳನ್ನು ಮತ್ತು ಇತರ ಅವಶ್ಯ ಹುದ್ದೆಗಳನ್ನು ಸೃಜಿಸುವುದು;

(xii) ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ಉದ್ದೇಶಗಳಿಗಾಗಿ ಇತರ ವಿಶ್ವವಿದ್ಯಾಲಯಗಳೊಡನೆ ಸಹಕರಿಸುವುದು ಮತ್ತು ಸಹಯೋಗ ಹೊಂದುವುದು;

(xiii) ಶಿಕ್ಷಕರಿಗೆ, ಪಾಠಗಳನ್ನು ರಚಿಸುವವರಿಗೆ, ಮೌಲ್ಯಮಾಪಕರಿಗೆ ಮತ್ತಿತರ ಶೈಕ್ಷಣಿಕ ಸಿಬ್ಬಂದಿಗೆ ಪುನರ್ಮನನ ವ್ಯಾಸಂಗಕ್ರಮಗಳು, ಅಭಿಮುಖ ವ್ಯಾಸಂಗ ಕ್ರಮಗಳು, ಕಾರ್ಯಾಗಾರಗಳು, ವಿಚಾರಗೋಷ್ಠಿಗಳು ಮತ್ತಿತರ ಕಾರ್ಯಕ್ರಮಗಳನ್ನು ಏರ್ಪಡಿಸುವುದು ಮತ್ತು ನಡೆಸುವುದು ;

(xiv) ಶೈಕ್ಷಣಿಕ ಪರಿಷತ್ತಿನ ಅನುಮೋದನೆಯೊಂದಿಗೆ ವಿಶ್ವವಿದ್ಯಾಲಯಕ್ಕೆ ಅಥವಾ ಘಟಕ ಕಾಲೇಜಿಗೆ, ಪ್ರಾದೇಶಿಕ ಕೇಂದ್ರಗಳಿಗೆ, ಅಧ್ಯಯನ ಕೇಂದ್ರಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮತ್ತು ಈ ಅಧಿನಿಯಮದಲ್ಲಿ ಕಲ್ಪಿಸಿದ ವ್ಯಾಪ್ತಿಗಿಂತ ಕಡಿಮೆಯಿಲ್ಲದಂತೆ ಕರ್ನಾಟಕದ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮಾನಕ ಗುಣಮಟ್ಟಗಳನ್ನು ನಿರ್ಧರಿಸುವುದು;

(xv) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಕಾರ್ಯರೂಪಕ್ಕೆ ತರಲು ಅವಶ್ಯವಾಗಬಹುದಾದಂಥ ಇತರ ಎಲ್ಲಾ ಕ್ರಮಗಳನ್ನು ಅಥವಾ ಕಾರ್ಯಗಳನ್ನು, ಅವು ಮೇಲೆ ಹೇಳಿದ ಅಧಿಕಾರಗಳಿಗೆ ಪ್ರಾಸಂಗಿಕವಾಗಿರಲಿ ಅಥವಾ ಇಲ್ಲದಿರಲಿ, ಕೈಗೊಳ್ಳುವುದು;

(xvi) ಪರೀಕ್ಷೆಗಳ ಆಧಾರದ ಮೇಲೆ ಅಥವಾ ಸರ್ಕಾರದಿಂದ ಅನುಮೋದಿತವಾದ ಇತರ ಯಾವುದೇ ಮೌಲ್ಯಮಾಪನ ವಿಧಾನದ ಆಧಾರದ ಮೇಲೆ ನೀಡಲು ಪದವಿಗಳು, ಡಿಪ್ಲೋಮಾಗಳು, ಪ್ರಮಾಣಪತ್ರಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಸ್ಥಾಪಿಸುವುದು;

(xvii) ಫಿಲಂಗಳು, ಕ್ಯಾಸೆಟ್‌ಗಳು, ಧ್ವನಿಸುರುಳಿಗಳು, ದೃಶ್ಯಸುರುಳಿಗಳು, ಸಿ.ಡಿ., ವಿ.ಸಿ.ಡಿ. ಮತ್ತು ಇತರ ತಂತ್ರಾಂಶಗಳೂ ಹಾಗೂ ಇತರ ಸಂಬಂಧಿತ ವಿದ್ಯುನ್ಮಾನ ಮತ್ತು ಮುದ್ರಣ ಮಾಧ್ಯಮ ಸೇರಿದಂತೆ ಬೋಧಕ ಸಾಮಗ್ರಿಗಳನ್ನು ತಯಾರಿಸುವುದಕ್ಕಾಗಿ ಅವಕಾಶ ಕಲ್ಪಿಸುವುದು;

(xviii) ಪ್ರಬಂಧಕ ಮಂಡಳಿಯ ಅನುಮೋದನೆಯೊಡನೆ ವಿಶ್ವವಿದ್ಯಾಲಯದ ಉದ್ದೇಶಗಳಿಗಾಗಿ ವಿಶ್ವವಿದ್ಯಾಲಯದ ಸ್ವತ್ತುಗಳನ್ನು ಭದ್ರತೆಯಾಗಿ ನೀಡಿ ಅಥವಾ ನೀಡದೆ ಹಣವನ್ನು ಪಡೆಯುವುದು, ಸಂಗ್ರಹಿಸುವುದು, ಚಂದಾದಾರರಾಗುವುದು ಮತ್ತು ಸಾಲ ಪಡೆಯುವುದು;

(xix) ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುವೇ ಇತರ ಶೈಕ್ಷಣಿಕ ಸಂಸ್ಥೆಗಳ ಆಡಳಿತವನ್ನು ಪಡೆದುಕೊಳ್ಳುವುದು, ವಹಿಸಿಕೊಳ್ಳುವುದು ಮತ್ತು ನಡೆಸುವುದು;

(xx) ವ್ಯವಸ್ಥಾಪನಾ ಮಂಡಳಿಯ ಪೂರ್ವಾನುಮೋದನೆಯೊಂದಿಗೆ ಸ್ವತ್ತುಗಳನ್ನು ಆರ್ಜಿಸುವುದು;

(xxi) ವಿಶ್ವವಿದ್ಯಾಲಯದ ಮೇಲಿನ ಉದ್ದೇಶಗಳಿಗೆ ಸಂಬಂಧಿಸಿದ ಅಥವಾ ಪ್ರಾಸಂಗಿಕವಾದ ಯಾವುದೇ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು.

**9. ವಿಶ್ವವಿದ್ಯಾಲಯವು ಎಲ್ಲಾ ವರ್ಗಗಳು, ಜಾತಿಗಳು, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲರಿಗೂ ಮುಕ್ತವಾಗಿರತಕ್ಕದ್ದು.–** ವಿಶ್ವವಿದ್ಯಾಲಯದ ಪ್ರವೇಶಗಳು ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲಾ ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು. ಎಲ್ಲಾ ಪ್ರವೇಶಗಳನ್ನು ಅರ್ಹತಾ ಪರೀಕ್ಷೆಗಳಲ್ಲಿನ ಅರ್ಹತೆಯ ಆಧಾರದ ಮೇಲೆ ಮಾಡತಕ್ಕದ್ದು:

ಪರಂತು, ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳ ಪ್ರವೇಶದಲ್ಲಿ ಶೇಕಡಾ ನಲವತ್ತರಷ್ಟನ್ನು ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ಮೀಸಲಿಡತಕ್ಕದ್ದು ಮತ್ತು ಪ್ರವೇಶಗಳನ್ನು ರಾಜ್ಯ ಸರ್ಕಾರವು ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡತಕ್ಕದ್ದು ಮತ್ತು ಸೀಟುಗಳನ್ನು ಅರ್ಹತೆ ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ರೂಪಿಸುವ ಮೀಸಲಾತಿ ನೀತಿಗೆ ಅನುಸಾರವಾಗಿ ಹಂಚಿಕೆ ಮಾಡತಕ್ಕದ್ದು:

ಮತ್ತು ಪರಂತು, ಯಾವುದೇ ಕೋರ್ಸಿನಲ್ಲಿ ಹತ್ತಕ್ಕಿಂತ ಕಡಿಮೆ ಸೀಟುಗಳು ಇರುವಲ್ಲಿ, ಸ್ನಾತಕೋತ್ತರ ಇಂಥ ಕೋರ್ಸುಗಳನ್ನು ಒಟ್ಟಿಗೆ ಒಂದುಗೂಡಿಸುವ ಮೂಲಕ ಮೀಸಲಿಡತಕ್ಕದ್ದು ಮತ್ತು ಯಾವುದೇ ಕೋರ್ಸಿನಲ್ಲಿ ಮೂರು ಸೀಟುಗಳಿಗಿಂತ ಕಡಿಮೆ ಇರುವಲ್ಲಿ, ಅವುಗಳನ್ನು ಸುತ್ತು ಸರದಿಯಲ್ಲಿ ಮೀಸಲಿಡತಕ್ಕದ್ದು.

**10. ರಾಷ್ಟ್ರೀಯ ಅಧಿಮಾನ್ಯತೆ.–** ವಿಶ್ವವಿದ್ಯಾಲಯವು ಪ್ರಾರಂಭವಾದ ತರುವಾಯ ಆದಷ್ಟು ಬೇಗನೆ ಸಂಬಂಧಪಟ್ಟ ಶಾಸನಾತ್ಮಕ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳಿಂದ ಅಧಿಮಾನ್ಯತೆಯನ್ನು ಕೋರತಕ್ಕದ್ದು ಮತ್ತು ಖಾಸಗಿ ವಿಶ್ವವಿದ್ಯಾಲಯಗಳು ನಡೆಸುವ ಎಲ್ಲಾ ವ್ಯಾಸಂಗ ಕ್ರಮಗಳು ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ವಿನಿಯಮಗಳಿಗೆ ಅನುಸಾರವಾಗಿ ಇರತಕ್ಕದ್ದು.

**11. ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು.–** ಪ್ರಾಯೋಜಕ ಸಂಸ್ಥೆಯು ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದಂತೆ ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಇವುಗಳಲ್ಲಿ ಪ್ರತಿಯೊಂದನ್ನು ಪ್ರಾಯೋಜಕ ಸಂಸ್ಥೆಯು ತನ್ನ ವಿವೇಚನಾನುಸಾರ ಚಲಾಯಿಸಬಹುದು, ಎಂದರೆ:–

(i) ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಪುನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(ii) ವಿಶ್ವವಿದ್ಯಾಲಯದ ಪ್ರಥಮ ಪ್ರಬಂಧಕ ಮಂಡಳಿಯನ್ನು ರಚಿಸುವುದು;

(iii) ಪ್ರಬಂಧಕ ಮಂಡಳಿಯ ಅಧ್ಯಕ್ಷರನ್ನು ನಾಮನಿರ್ದೇಶಿಸುವುದು;

(iv) ಪ್ರಬಂಧಕ ಮಂಡಳಿಯ ಸದಸ್ಯರಾಗಿ ಮೂರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(v) ವ್ಯವಸ್ಥಾಪನಾ ಮಂಡಳಿಯ ಸದಸ್ಯರಾಗಿ ಇಬ್ಬರು ವ್ಯಕ್ತಿಗಳನ್ನು ನಾಮ ನಿರ್ದೇಶಿಸುವುದು;

(vi) ವಿಶ್ವವಿದ್ಯಾಲಯದ ದತ್ತಿ ನಿಧಿಗೆ ದೇಣಿಗೆ ನೀಡಲು ನಿಧಿ ಮೂಲಗಳನ್ನು ನಿರ್ಧರಿಸುವುದು;

(vii) ವಿಶ್ವವಿದ್ಯಾಲಯದ ಹಣದ ವಿನಿಯೋಗ ಮತ್ತು ವೆಚ್ಚ ಮಾಡುವುದನ್ನು ನಿರ್ಧರಿಸುವುದು;

(viii) ಈ ಅಧಿನಿಯಮದಲ್ಲಿ ಉಪಬಂಧಿಸಿರುವ ವಿಧಾನದಲ್ಲಿ ಪ್ರಬಂಧಕ ಮಂಡಳಿಯ ಸಭೆಯಲ್ಲಿಯ ಯಾವುವೇ ವಿವಾದಗಳನ್ನು ಬಗೆಹರಿಸುವುದು;

## ಅಧ್ಯಾಯ – III

## ವಿಶ್ವವಿದ್ಯಾಲಯದ ಅಧಿಕಾರಿಗಳು

**12. ವಿಶ್ವವಿದ್ಯಾಲಯದ ಅಧಿಕಾರಿಗಳು.–** ಈ ಮುಂದಿನವರು ವಿಶ್ವವಿದ್ಯಾಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:–

(i) ಸಂದರ್ಶಕರು;

(ii) ಸಹ–ಸಂದರ್ಶಕರು;

(iii) ಕುಲಾಧಿಪತಿಗಳು;

(iv) ಕುಲಪತಿಗಳು;

(v) ಸಹಕುಲಪತಿಗಳು;

(vi) ಕುಲಸಚಿವರು;

(vii) ಹಣಕಾಸು ಅಧಿಕಾರಿ; ಮತ್ತು

(viii) ಪರಿನಿಯಮಗಳ ಮೂಲಕ ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಘೋಷಿಸಬಹುದಾದಂಥ ಇತರ ಅಧಿಕಾರಿಗಳು.

**13. ಸಂದರ್ಶಕರು.–** (1) ಕರ್ನಾಟಕದ ಘನತೆವೆತ್ತ ರಾಜ್ಯಪಾಲರು ವಿಶ್ವವಿದ್ಯಾಲಯದ ಸಂದರ್ಶಕರಾಗಿರತಕ್ಕದ್ದು ಮತ್ತು ಸಂದರ್ಶಕರು ವಿಶ್ವವಿದ್ಯಾಲಯದ ಕಾರ್ಯನಿರ್ವಹಣೆಯ ಸುಧಾರಣೆಗಾಗಿ ಸಲಹೆಗಳನ್ನು ನೀಡಬಹುದು.

(2) ಸಂದರ್ಶಕರು, ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಸಂದರ್ಶಕರು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

ಪ–5

(i) ವಿಶ್ವವಿದ್ಯಾಲಯದ ವ್ಯವಹಾರಗಳಿಗೆ ಸಂಬಂಧಿಸಿದಂತೆ, ಯಾವುದೇ ಪತ್ರ ಅಥವಾ ಮಾಹಿತಿಯನ್ನು ತರಿಸಿಕೊಳ್ಳುವುದು;

(ii) ಸಂದರ್ಶಕರು, ಅವರು ಸ್ವೀಕರಿಸಿದ ಮಾಹಿತಿಯ ಆಧಾರದ ಮೇಲೆ ವಿಶ್ವವಿದ್ಯಾಲಯಗಳ ಯಾವುದೇ ಪ್ರಾಧಿಕಾರವು ಮಾಡಿದ ಯಾವುದೇ ಆದೇಶ, ನಡೆಸಿದ ವ್ಯವಹರಣೆಗಳು ಅಥವಾ ಕೈಗೊಂಡ ತೀರ್ಮಾನಗಳು, ಈ ಅಧಿನಿಯಮಕ್ಕೆ, ವಿನಿಯಮಗಳಿಗೆ ಅಥವಾ ನಿಯಮಗಳಿಗೆ ಪೂರಕವಾಗಿಲ್ಲವೆಂದು ಮನಗಂಡರೆ ಅವರು ವಿಶ್ವವಿದ್ಯಾಲಯದ ಹಿತಾಸಕ್ತಿಯಿಂದ ತಾವು ಸೂಕ್ತವೆಂದು ಭಾವಿಸಬಹುದಾದ ಅಂಥ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಹಾಗೆ ಹೊರಡಿಸಿದ ನಿರ್ದೇಶನಗಳನ್ನು ಸಂಬಂಧಪಟ್ಟವರೆಲ್ಲರೂ ಪಾಲಿಸತಕ್ಕದ್ದು.

**14. ಸಹ-ಸಂದರ್ಶಕರು.–** (1) ಕರ್ನಾಟಕ ಸರ್ಕಾರದ ಮಾನ್ಯ ಉನ್ನತ ಶಿಕ್ಷಣ ಸಚಿವರು ವಿಶ್ವವಿದ್ಯಾಲಯದ ಸಹ-ಸಂದರ್ಶಕರಾಗಿರತಕ್ಕದ್ದು.

(2) ಸಂದರ್ಶಕರ ಅನುಪಸ್ಥಿತಿಯಲ್ಲಿ ಸಹ-ಸಂದರ್ಶಕರು ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**15. ಕುಲಾಧಿಪತಿಗಳು.–** (1) ಕುಲಾಧಿಪತಿಯವರನ್ನು ಪ್ರಾಯೋಜಕ ಸಂಸ್ಥೆಯು ನೇಮಿಸತಕ್ಕದ್ದು.

(2) ಪ್ರಾಯೋಜಕ ಸಂಸ್ಥೆಯ ಸಂಸ್ಥಾಪಿತ ನ್ಯಾಸಧಾರಿಯು ಮೊದಲನೇ ಕುಲಾಧಿಪತಿಗಳಾಗಿರತಕ್ಕದ್ದು, ಅವರು ತಮ್ಮ ಜೀವನಪರ್ಯಂತ ಅಥವಾ ಅವರು ತಮ್ಮ ಪದವನ್ನು ಬಿಟ್ಟುಕೊಡುವವರೆಗೆ ಕುಲಾಧಿಪತಿಗಳಾಗಿ ಪದಧಾರಣ ಮಾಡಿರತಕ್ಕದ್ದು.

(3) ತದನಂತರದ ಕುಲಾಧಿಪತಿಗಳು, ಅಂಥ ನೇಮಕಾತಿಯನ್ನು ಪರಿಗಣಿಸುವ ಸಂದರ್ಭದಲ್ಲಿ ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ, ಪ್ರಾಯೋಜಕ ಸಂಸ್ಥೆಯ ನ್ಯಾಸಧಾರಿಯಾಗಿರತಕ್ಕದ್ದು ಅಥವಾ ಶಿಕ್ಷಣ, ವಿಜ್ಞಾನ, ಸಂಸ್ಕೃತಿ ಅಥವಾ ಸಾರ್ವಜನಿಕ ಜೀವನ ಕ್ಷೇತ್ರಗಳಲ್ಲಿ ರಾಷ್ಟ್ರೀಯ ಮಟ್ಟದ ಛಾಪನ್ನು ಪಡೆದಿರುವ ಅಂಥ ಇತರ ವ್ಯಕ್ತಿಯಾಗಿರತಕ್ಕದ್ದು.

(4) ಹಾಗೆ ನೇಮಕಗೊಂಡ ತದನಂತರದ ಕುಲಾಧಿಪತಿಗಳು ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ಪದಧಾರಣ ಮಾಡತಕ್ಕದ್ದು.

(5) ಕುಲಾಧಿಪತಿಗಳು ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳ ಅಡಿಯಲ್ಲಿ ಅವರಿಗೆ ಪ್ರದಾನ ಮಾಡಬಹುದಾದ ಅಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು, ಅವುಗಳಲ್ಲಿ ಈ ಮುಂದಿನ ಅಧಿಕಾರಗಳು ಒಳಗೊಂಡಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುವುದು;

(ii) ಸಂದರ್ಶಕರ ಮತ್ತು ಸಹ-ಸಂದರ್ಶಕರಿಬ್ಬರ ಗೈರುಹಾಜರಿಯಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಘಟಿಕೋತ್ಸವಗಳಲ್ಲಿ ಅಧ್ಯಕ್ಷತೆಯನ್ನು ವಹಿಸುವುದು;

(iii) ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವುದು;

(iv) ಈ ಅಧಿನಿಯಮ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಅನುಸಾರವಾಗಿ ಕುಲಪತಿಗಳನ್ನು ನೇಮಿಸುವುದು ಅಥವಾ ಪುನರ್ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(v) ಈ ಅಧಿನಿಯಮದ 16ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ನಾಮನಿರ್ದೇಶಕ ಸಮಿತಿಯ ಸದಸ್ಯರಾಗಿ ಒಬ್ಬ ವ್ಯಕ್ತಿಯನ್ನು ನಾಮನಿರ್ದೇಶನ ಮಾಡುವುದು;

(vi) ಸಹಕುಲಪತಿಗಳು, ಡೀನ್, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿಗಳ ನೇಮಕಾತಿಯನ್ನು ಪೂರ್ವಾನುಮೋದಿಸುವುದು;

(vii) ಪ್ರಬಂಧಕ ಮಂಡಳಿಯ ಸದಸ್ಯರನ್ನಾಗಿ ಇಬ್ಬರು ಶಿಕ್ಷಣ ತಜ್ಞರನ್ನು ನಾಮನಿರ್ದೇಶಿಸುವುದು;

(viii) ಮೊದಲ ಸಹಕುಲಪತಿಗಳು ಮತ್ತು ಹಣಕಾಸು ಅಧಿಕಾರಿಗಳನ್ನು ನೇಮಿಸುವುದು;

(ix) ಮೊದಲ ವ್ಯವಸ್ಥಾಪನಾ ಮಂಡಳಿ, ಹಣಕಾಸು ಸಮಿತಿ, ಸಂಶೋಧನಾ ಪರಿಷತ್ತು ಹಾಗೂ ಶೈಕ್ಷಣಿಕ ಪರಿಷತ್ತುಗಳನ್ನು ರಚಿಸುವುದು;

(x) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ ಕಾರ್ಯಸೂಚಿ ವಿಷಯಗಳನ್ನು ಪೂರ್ವಾನುಮೋದಿಸುವುದು;

(xi) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ (ಪ್ರಬಂಧಕ ಮಂಡಳಿಯ ಸಭೆಯಲ್ಲಿ ಉಂಟಾದ ವಿವಾದಗಳನ್ನು ಹೊರತುಪಡಿಸಿ) ವಿವಾದಗಳನ್ನು ಪರಿಹರಿಸುವುದು.

(6) ಪದಾಧಿಕಾರಿ ಅಥವಾ ಸಂಸ್ಥೆ ಮತ್ತು ವಿಶ್ವವಿದ್ಯಾಲಯದ ಯಾವುದೇ ಇತರ ಪದಾಧಿಕಾರಿ ಅಥವಾ ಸಂಸ್ಥೆಗಳ ನಡುವೆ ವಿವಾದಗಳು ಉಂಟಾದಲ್ಲಿ, ಆ ವಿವಾದವನ್ನು ಕುಲಾಧಿಪತಿಯವರ ಪರ್ಯಾಲೋಚನೆಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿವಾದದ ಸಂದರ್ಭದಲ್ಲಿ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**16. ಕುಲಪತಿಗಳು.**– (1) (2)ನೇ ಉಪಪ್ರಕರಣದ ಉಪಬಂಧಗಳಿಗೆ ಅನುಸಾರವಾಗಿ ನಾಮನಿರ್ದೇಶಕ ಸಮಿತಿಯು ಶಿಫಾರಸ್ಸು ಮಾಡಿದ ಮೂರು ವ್ಯಕ್ತಿಗಳ ಪೈಕಿಯಿಂದ ಒಬ್ಬರನ್ನು ಮೂರು ವರ್ಷಗಳ ಅವಧಿಗಾಗಿ ಕುಲಪತಿಗಳನ್ನಾಗಿ, ಪರಿನಿಯಮಗಳಲ್ಲಿ ನಿಯಮಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರು ನೇಮಿಸತಕ್ಕದ್ದು. ಮೂರು ವರ್ಷಗಳ ಅವಧಿಯು ಮುಗಿದ ತರುವಾಯ, ಇದನ್ನು ಮೂರು ವರ್ಷಗಳ ಮತ್ತೊಂದು ಅವಧಿಗೆ ನವೀಕರಿಸಬಹುದು:

ಪರಂತು, ಕುಲಪತಿಯವರು, ತಮ್ಮ ಅವಧಿ ಮುಗಿದ ನಂತರವೂ ಹೊಸ ಕುಲಪತಿಯವರು ಸೇರಿಕೊಳ್ಳುವವರೆಗೆ ಪದದಲ್ಲಿ ಮುಂದುವರೆಯತಕ್ಕದ್ದು. ಆದಾಗ್ಯೂ ಈ ಅವಧಿಯು ಯಾವುದೇ ಸಂದರ್ಭದಲ್ಲಿ ಒಂದು ವರ್ಷವನ್ನು ಮೀರತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಹೇಳಿರುವ ನಾಮನಿರ್ದೇಶಕ ಸಮಿತಿಯಲ್ಲಿ ಈ ಮುಂದಿನ ವ್ಯಕ್ತಿಗಳು ಇರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು ನಾಮನಿರ್ದೇಶಿಸಿದ ಒಬ್ಬ ವ್ಯಕ್ತಿ;

(ii) ಪ್ರಬಂಧಕ ಮಂಡಳಿಯ ಇಬ್ಬರು ನಾಮ ನಿರ್ದೇಶಿತರು, ಇವರಲ್ಲಿ ಒಬ್ಬರನ್ನು ಪ್ರಬಂಧಕ ಮಂಡಳಿಯು ಸಮಿತಿಯ ಸಂಚಾಲಕರೆಂದು ನಾಮನಿರ್ದೇಶಿಸತಕ್ಕದ್ದು.

(3) ನಾಮನಿರ್ದೇಶಕ ಸಮಿತಿಯು, ಅರ್ಹತೆಯ ಆಧಾರದ ಮೇಲೆ ಕುಲಪತಿಯ ಹುದ್ದೆಗೆ ಸೂಕ್ತವಾದ ಮೂರು ವ್ಯಕ್ತಿಗಳ ಹೆಸರನ್ನು ಶಿಫಾರಸ್ಸು ಮಾಡತಕ್ಕದ್ದು ಮತ್ತು ಅದನ್ನು ಪ್ರತಿಯೊಬ್ಬ ವ್ಯಕ್ತಿಯ ವಿದ್ಯಾರ್ಹತೆ ಮತ್ತಿತರ ವಿಶಿಷ್ಟ ಪ್ರಶಸ್ತಿಗಳನ್ನು ತಿಳಿಸುವ ಒಂದು ಸಂಕ್ಷಿಪ್ತ ವರದಿಯೊಂದಿಗೆ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು.

(4) ಕುಲಪತಿಯವರು ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಾಹಕ ಮತ್ತು ಶೈಕ್ಷಣಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣವನ್ನು ಚಲಾಯಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯದ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೊಳಿಸತಕ್ಕದ್ದು:

ಪರಂತು, ಶಿಕ್ಷಕರ ನೇಮಕಾತಿಯನ್ನು ಹೊರತುಪಡಿಸಿ ಕೂಡಲೇ ಕ್ರಮವನ್ನು ಕೈಗೊಳ್ಳಬೇಕಾದ ತುರ್ತು ಸ್ವರೂಪದ ಯಾವುದೇ ಇತರ ವಿಷಯಗಳಲ್ಲಿ ಮತ್ತು ಅದನ್ನು ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ವಿಶ್ವವಿದ್ಯಾಲಯವು ಇದಕ್ಕಾಗಿ ಅಧಿಕೃತಗೊಳಿಸಿದ್ದ ಯಾವೊಬ್ಬ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ಇತರ ಸಂಸ್ಥೆಯು ಕೂಡಲೇ ಕ್ರಮಕೈಗೊಳ್ಳುವುದು ಸಾಧ್ಯವಿರದಿರುವಾಗ ಕುಲಪತಿಯವರು ತಾನು ಸೂಕ್ತವೆಂದು ಭಾವಿಸಬಹುದಾದಂತಹ ಕ್ರಮವನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆದು ಕೈಗೊಳ್ಳತಕ್ಕದ್ದು.

(5) ಕುಲಪತಿಯವರು ಪರಿನಿಯಮಗಳು ಅಥವಾ ನಿಯಮಗಳಲ್ಲಿ ಹೇಳಲಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು:

ಪರಂತು, ಕುಲಪತಿಗಳ ಅಭಿಪ್ರಾಯದಲ್ಲಿ, ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಯಾವುದೇ ನಿರ್ಣಯವು, ಈ ಅಧಿನಿಯಮ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳು, ವಿನಿಯಮಗಳು ಅಥವಾ ನಿಯಮಗಳ ಮೂಲಕ ಪ್ರದತ್ತವಾದ ಅಧಿಕಾರದ ಹೊರಗಿದ್ದರೆ ಅಥವಾ ವಿಶ್ವವಿದ್ಯಾಲಯದ ಹಿತಾಸಕ್ತಿಗೆ ಪ್ರತಿಕೂಲವಾಗಬಹುದಾಗಿದ್ದರೆ, ಅದರ ನಿರ್ಣಯದ ದಿನಾಂಕದಿಂದ ಹದಿನೈದು ದಿನಗಳ ಒಳಗೆ ತನ್ನ ನಿರ್ಣಯವನ್ನು ಪರಿಷ್ಕರಿಸಲು ಸಂಬಂಧಪಟ್ಟ ಪ್ರಾಧಿಕಾರವನ್ನು ಆತನು ಕೋರತಕ್ಕದ್ದು ಮತ್ತು ಪ್ರಾಧಿಕಾರವು ಅಂಥ ನಿರ್ಣಯವನ್ನು ಸಂಪೂರ್ಣವಾಗಿ ಅಥವಾ ಭಾಗಶಃವಾಗಿ ಪರಿಷ್ಕರಿಸಲು ನಿರಾಕರಿಸಿದ ಸಂದರ್ಭದಲ್ಲಿ ಅಥವಾ ಹದಿನೈದು ದಿನಗಳೊಳಗೆ ಯಾವುದೇ ನಿರ್ಣಯವನ್ನು

ತೆಗೆದುಕೊಳ್ಳಲು ವಿಫಲವಾದಲ್ಲಿ, ನಂತರ ಅಂಥ ವಿಷಯವನ್ನು ಕುಲಾಧಿಪತಿಗಳಿಗೆ ಕಳುಹಿಸತಕ್ಕದ್ದು ಮತ್ತು ಈ ಬಗ್ಗೆ ಇವರ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

(6) ಕುಲಪತಿಯವರ ಸೇವೆಗಳನ್ನು, ಪ್ರಬಂಧಕ ಮಂಡಳಿಯ ಅನುಮೋದನೆಯೊಂದಿಗೆ ಮತ್ತು ಸಹಜ ನ್ಯಾಯದ ತತ್ವಗಳನ್ನು ಅನುಸರಿಸಿದ ನಂತರ ಹಾಗೂ ಶಿಸ್ತಿನ ಆಧಾರದ ಮೇಲೆ ಅಂತ್ಯಗೊಳಿಸುವ ಸಂದರ್ಭವೂ ಸೇರಿದಂತೆ, ಪ್ರಕರಣದ ಬಗ್ಗೆ ಕುಲಪತಿಯು ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡಿದ ತರುವಾಯ, ಕುಲಾಧಿಪತಿಯವರು ಅಂತ್ಯಗೊಳಿಸಬಹುದು.

(7) ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಸಂದರ್ಶಕರು, ಸಹ-ಸಂದರ್ಶಕರು ಮತ್ತು ಕುಲಾಧಿಪತಿಯವರು ಇವರುಗಳ ಗೈರು ಹಾಜರಿಯ ಸಂದರ್ಭದಲ್ಲಿ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**17. ಸಹಕುಲಪತಿಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಮೂರು ಜನರನ್ನು ಮೀರದಂತೆ ಸಹಕುಲಪತಿಗಳನ್ನು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**18. ವ್ಯಾಸಂಗ ವಿಭಾಗಗಳ ಡೀನ್‌ಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಪರಿನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವ್ಯಾಸಂಗ ವಿಭಾಗಗಳ ಡೀನ್‌ಗಳನ್ನು ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**19. ಕುಲಸಚಿವರು.–** (1) ಕುಲಾಧಿಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಸಚಿವರನ್ನು ನೇಮಕ ಮಾಡತಕ್ಕದ್ದು.

(2) ಪರಿನಿಯಮಗಳಲ್ಲಿ ಪರಿಭಾಷಿಸಿರುವಂಥ ಎಲ್ಲಾ ಕರಾರುಗಳನ್ನು ವಿಶ್ವವಿದ್ಯಾಲಯದ ಪರವಾಗಿ ಕುಲಸಚಿವರು ಮಾಡಿಕೊಳ್ಳತಕ್ಕದ್ದು ಮತ್ತು ಅದಕ್ಕೆ ಸಹಿ ಹಾಕತಕ್ಕದ್ದು.

(3) ಕುಲಸಚಿವರು ವಿಶ್ವವಿದ್ಯಾಲಯದ ಪರವಾಗಿ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಪರಿನಿಯಮಗಳಿಂದ ಪ್ರದತ್ತಗೊಳಿಸಬಹುದಾದಂಥ ಅಥವಾ ಕುಲಾಧಿಪತಿಯವರು ಮತ್ತು ಕುಲಪತಿಯವರು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು ವಿಶ್ವವಿದ್ಯಾಲಯದ ದಾಖಲೆಗಳು ಮತ್ತು ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು, ಕುಲಪತಿಯವರು ಅಥವಾ ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಅಂಥ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿತಕ್ಕದ್ದು.

**20. ಹಣಕಾಸು ಅಧಿಕಾರಿ.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು, ಪರಿನಿಯಮಗಳ ಮೂಲಕ ಪ್ರದತ್ತಗೊಳಿಸಬಹುದಾದ ಅಂಥ ವಿಧಾನದಲ್ಲಿ ಹಣಕಾಸು ಅಧಿಕಾರಿಯನ್ನು ನೇಮಕ ಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**21. ಇತರ ಅಧಿಕಾರಿಗಳು.–** ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ ನೇಮಕಾತಿಯ ವಿಧಾನ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಕರ್ತವ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ – IV

## ವಿಶ್ವವಿದ್ಯಾಲಯದ ಪ್ರಾಧಿಕಾರಗಳು

**22. ವಿಶ್ವವಿದ್ಯಾಲಯದ ಪ್ರಾಧಿಕಾರಗಳು.–** ಈ ಮುಂದಿನವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:–

(i) ಪ್ರಬಂಧಕ ಮಂಡಳಿ;

(ii) ವ್ಯವಸ್ಥಾಪನ ಮಂಡಳಿ;

(iii) ಶೈಕ್ಷಣಿಕ ಪರಿಷತ್ತು;

(iv) ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು;

(v) ಹಣಕಾಸು ಸಮಿತಿ; ಮತ್ತು

(vi) ವಿಶ್ವವಿದ್ಯಾಲಯದ ಪ್ರಾಧಿಕಾರಗಳೆಂದು ಪರಿನಿಯಮಗಳ ಮೂಲಕ ಘೋಷಿಸಬಹುದಾದ ಅಂಥ ಇತರ ಪ್ರಾಧಿಕಾರಗಳು.

**23. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು.**-(1) ಪ್ರಬಂಧಕ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಾಧಿಪತಿಯವರು - ಅಧ್ಯಕ್ಷರು;

(ii) ಕುಲಪತಿಯವರು - ಸದಸ್ಯರು;

(iii) ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(iv) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(v) ರಾಜ್ಯ ಸರ್ಕಾರವು ನಾಮ ನಿರ್ದೇಶನ ಮಾಡಿದ ಆಡಳಿತವನ್ನು ಒಳಗೊಂಡಂತೆ ವ್ಯವಸ್ಥಾಪನೆ, ಹಣಕಾಸು ಅಥವಾ ಯಾವುದೇ ಇತರ ವಿಶೇಷ ಕ್ಷೇತ್ರದಲ್ಲಿನ ಒಬ್ಬರು ತಜ್ಞರು;

(vi) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಇಬ್ಬರು ವ್ಯಕ್ತಿಗಳು ಅವರ ಪೈಕಿ ಒಬ್ಬರು ಮಹಿಳೆಯಾಗಿರತಕ್ಕದ್ದು;

(vii) ಸಹ ಕುಲಪತಿಯವರು ಮತದಾನದ ಹಕ್ಕಿಲ್ಲದ ಸದಸ್ಯರಾಗಿರತಕ್ಕದ್ದು;

(viii) ವಿಶ್ವವಿದ್ಯಾಲಯ ಅನುದಾನ ಆಯೋಗದ ನಾಮನಿರ್ದೇಶಿತ ಒಬ್ಬ ಸುಪ್ರಸಿದ್ಧ ಶಿಕ್ಷಣ ತಜ್ಞರು.

(2) ಕುಲಸಚಿವರು ಪ್ರಬಂಧಕ ಮಂಡಳಿಯ ಮತ ದಾನದ ಹಕ್ಕಿರದ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ಪ್ರಬಂಧಕ ಮಂಡಳಿಯ ಸದಸ್ಯರ ಪದಾವಧಿ, ಸರ್ಕಾರದಿಂದ ನಾಮನಿರ್ದೇಶಿತರಾದ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ನೇಮಕಾತಿ, ನವೀಕರಣ ಮತ್ತು ತೆಗೆದುಹಾಕುವುದು ಮುಂತಾದವುಗಳು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಾಧಿಪತಿಯವರು ಯಾವಾಗಲೂ ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರ ಗೈರುಹಾಜರಿಯಲ್ಲಿ ಕುಲಾಧಿಪತಿಯವರಿಂದ ನಾಮನಿರ್ದೇಶಿತರಾದ ಯಾರಾದರೂ ಒಬ್ಬರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು. ಅಂಥ ಸಭೆಯ ಅಧ್ಯಕ್ಷತೆಯನ್ನು ವಹಿಸುವುದಕ್ಕೆ ಕುಲಾಧಿಪತಿಯವರು ಯಾವೊಬ್ಬ ವ್ಯಕ್ತಿಯನ್ನೂ ನಾಮನಿರ್ದೇಶನ ಮಾಡಿರದಿದ್ದಲ್ಲಿ, ಸಭೆಯಲ್ಲಿ ಹಾಜರಿರುವ ಸದಸ್ಯರು ಸರಳ ಬಹುಮತದ ಮೂಲಕ ಅವರುಗಳ ಪೈಕಿಯಿಂದಲೇ ಆ ಸಭೆಗೆ ಮಾತ್ರವೇ ಅಧ್ಯಕ್ಷನನ್ನು ಚುನಾಯಿಸತಕ್ಕದ್ದು.

(5) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಿಗೆ, ಅಂಥ ಸಭೆಯಲ್ಲಿ ಹಾಜರಾಗುವ ಮತ್ತು ಮತದಾನ ನೀಡುವ ಮೂರು ಜನ ಸದಸ್ಯರು ಗಣಪೂರ್ತಿ (ಕೋರಂ) ಆಗಿರತಕ್ಕದ್ದು:

ಪರಂತು, ಪ್ರಬಂಧಕ ಮಂಡಳಿಯ ಯಾವುದೇ ಸಭೆಯ ಕೋರಂ ಪೂರ್ಣವಾಗಬೇಕಾದರೆ ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಿರುವುದು ಮತ್ತು ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ನಾಮನಿರ್ದೇಶಿತರು ಹಾಜರಾಗದೇ ಇದ್ದಾಗ ಕುಲಪತಿಯವರು ಹಾಜರಿರುವುದು ಯಾವಾಗಲೂ ಅವಶ್ಯವಾಗಿರತಕ್ಕದ್ದು.

(6) ಪ್ರಬಂಧಕ ಮಂಡಳಿಯು ವಿಶ್ವವಿದ್ಯಾಲಯದ ಪ್ರಧಾನ ಪ್ರಬಂಧಕ ಸಂಸ್ಥೆಯಾಗಿರತಕ್ಕದ್ದು ಮತ್ತು ಅದು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಕಗೊಳಿಸುವುದು;

(ii) ವಿಶ್ವವಿದ್ಯಾಲಯವು ಅನುಸರಿಸಬೇಕಾದ ಕಾರ್ಯನೀತಿಗಳನ್ನು ರಚಿಸುವುದು;

(iii) ಈ ಅಧಿನಿಯಮದ ಅಥವಾ ಪರಿನಿಯಮಗಳ ಅಥವಾ ನಿಯಮಗಳ ಉಪಬಂಧಗಳಿಗೆ ಅನುಗುಣವಾಗಿ ಇರದ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ತೀರ್ಮಾನಗಳನ್ನು ಪುನರೀಕ್ಷಿಸುವುದು;

(iv) ವಿಶ್ವವಿದ್ಯಾಲಯದ ಆಯವ್ಯಯ ಮತ್ತು ವಾರ್ಷಿಕ ವರದಿಗಳನ್ನು ಅನುಮೋದಿಸುವುದು;

(v) ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸುವುದು ಅಥವಾ ಈಗಾಗಲೇ ಇರುವ ಪರಿನಿಯಮಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವುದು ಅಥವಾ ನಿರಸನಗೊಳಿಸುವುದು;

(vi) ವಿಶ್ವವಿದ್ಯಾಲಯವನ್ನು ಸ್ವಯಂಸಮಾಪನಗೊಳಿಸುವ ನಿರ್ಧಾರವನ್ನು ತೆಗೆದುಕೊಳ್ಳುವುದು;

(vii) ಸರ್ಕಾರಕ್ಕೆ ಸಲ್ಲಿಸುವ ಪ್ರಸ್ತಾವಗಳನ್ನು ಅನುಮೋದಿಸುವುದು;

(viii) ಶುಲ್ಕ ನಿಯಂತ್ರಣ ಸಮಿತಿಗೆ ಮೂವರು ಸದಸ್ಯರನ್ನು ನಾಮನಿರ್ದೇಶನ ಮಾಡುವುದು;

(ix) ವಿಶ್ವವಿದ್ಯಾಲಯದ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕೆ ಅಪೇಕ್ಷಣೀಯವೆಂದು ಕಂಡುಬರುವಂಥ ತೀರ್ಮಾನಗಳನ್ನು ಮತ್ತು ಕ್ರಮಗಳನ್ನು ಕೈಗೊಳ್ಳುವುದು.

(7) ಪ್ರಬಂಧಕ ಮಂಡಳಿಯು ಒಂದು ವರ್ಷದಲ್ಲಿ ಕನಿಷ್ಠ ಮೂರು ಸಲ ಸಭೆ ಸೇರತಕ್ಕದ್ದು.

(8) ಪ್ರಬಂಧಕ ಮಂಡಳಿಯು ಶಾಸನದ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ಸಮಯ ಮತ್ತು ಸ್ಥಳದಲ್ಲಿ ಸಭೆ ಸೇರತಕ್ಕದ್ದು.

**24. ವ್ಯವಸ್ಥಾಪನಾ ಮಂಡಳಿ.**– (1) ವ್ಯವಸ್ಥಾಪನಾ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಗಳು;

(ii) ಸಹಕುಲಪತಿಗಳು;

(iii) ಕುಲಸಚಿವರು;

(iv) ಪ್ರಾಯೋಜಕ ಸಂಸ್ಥೆಯ ಇಬ್ಬರು ನಾಮನಿರ್ದೇಶಿತರು;

(v) ಕುಲಪತಿಗಳು ನಾಮನಿರ್ದೇಶಿಸಬಹುದಾದ ವ್ಯಾಸಂಗ ವಿಭಾಗಗಳ ಇಬ್ಬರು ಡೀನ್‌ಗಳು;

(2) ಕುಲಪತಿಯವರು ವ್ಯವಸ್ಥಾಪನಾ ಮಂಡಳಿಯ ಅಧ್ಯಕ್ಷರಾಗಿರತಕ್ಕದ್ದು ಮತ್ತು ಕುಲಸಚಿವರು ವ್ಯವಸ್ಥಾಪನಾ ಮಂಡಳಿಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ವ್ಯವಸ್ಥಾಪನಾ ಮಂಡಳಿಯು ವಿಶ್ವವಿದ್ಯಾಲಯದ ಕಾರ್ಯನಿರ್ವಾಹಕ ಸಂಸ್ಥೆಯಾಗಿರತಕ್ಕದ್ದು. ವ್ಯವಸ್ಥಾಪನಾ ಮಂಡಳಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ವ್ಯವಸ್ಥಾಪನಾ ಮಂಡಳಿಯ ಎಲ್ಲಾ ಸಭೆಗಳಲ್ಲಿ ಯಾವಾಗಲೂ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು ಹಾಗೂ ಕುಲಪತಿಯವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೇ ಇದ್ದ ಸಂದರ್ಭದಲ್ಲಿ ಸಭೆಯಲ್ಲಿ ಹಾಜರಿರುವ ಸದಸ್ಯರು ಚುನಾಯಿಸಿದ ಯಾವುದೇ ಇತರ ಸದಸ್ಯರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ವ್ಯವಸ್ಥಾಪನಾ ಮಂಡಳಿಯ ಸಭೆಯಲ್ಲಿ ಯಾವುದೇ ವಿಷಯವನ್ನು ಕುರಿತು ವಿವಾದ ಉಂಟಾದಲ್ಲಿ ಸದರಿ ವಿಷಯವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯದ ಬಗ್ಗೆ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**25. ಶೈಕ್ಷಣಿಕ ಪರಿಷತ್ತು.**–(1) ಶೈಕ್ಷಣಿಕ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಕಾರ್ಯದರ್ಶಿಗಳು

(iv) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಶೈಕ್ಷಣಿಕ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಶೈಕ್ಷಣಿಕ ಸಂಸ್ಥೆಯಾಗಿರತಕ್ಕದ್ದು ಮತ್ತು ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಹಾಗೂ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**26. ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು.–** (1) ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಸಂಶೋಧನೆ ಮತ್ತು ಅನ್ವೇಷಣಾ ಸಮಿತಿಯಾಗಿರತಕ್ಕದ್ದು ಹಾಗೂ ಸಂಶೋಧನೆ ಮತ್ತು ಅನ್ವೇಷಣಾ ಕ್ಷೇತ್ರಗಳ ಆದ್ಯತೆಯೂ ಒಳಗೊಂಡಂತೆ, ವಿಶ್ವವಿದ್ಯಾಲಯವು ಕೈಗೊಳ್ಳಬೇಕಾದ ಸಂಶೋಧನೆ ಮತ್ತು ಅನ್ವೇಷಣೆಯ ಬಗ್ಗೆ ಒಂದು ವ್ಯಾಪಕವಾದ ಪರಿಪೂರ್ಣ ಭವಿಷ್ಯದ್ ದೃಷ್ಟಿಯನ್ನು ಒದಗಿಸತಕ್ಕದ್ದು. ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು, ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಮತ್ತು ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಸಂಶೋಧನೆ ಮತ್ತು ಅನ್ವೇಷಣಾ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

| | | |
|---|---|---|
| (i) | ಕುಲಪತಿಯವರು | – ಅಧ್ಯಕ್ಷರು |
| (ii) | ಸಹಕುಲಪತಿಯವರು | – ಸದಸ್ಯರು |
| (iii) | ಸಂಶೋಧನೆಯ ಡೀನ್ | – ಕಾರ್ಯದರ್ಶಿ |
| (iv) | ಅನ್ವೇಷಣಾ ವಿಭಾಗದ ಮುಖ್ಯಸ್ಥರು | – ಸದಸ್ಯರು |
| (v) | ಎಲ್ಲಾ ವ್ಯಾಸಂಗ ವಿಭಾಗಗಳ ಡೀನ್‌ಗಳು | – ಸದಸ್ಯರು ಮತ್ತು |
| (vi) | ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು. | |

**27. ಹಣಕಾಸು ಸಮಿತಿ.–** (1) ಹಣಕಾಸು ಸಮಿತಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

| | | |
|---|---|---|
| (i) | ಕುಲಾಧಿಪತಿಯವರು ಅಥವಾ ಅವರ ನಾಮನಿರ್ದೇಶಿತರು | – ಅಧ್ಯಕ್ಷರು |
| (ii) | ಕುಲಪತಿಯವರು | – ಸದಸ್ಯರು |
| (iii) | ಕುಲಸಚಿವರು | – ಸದಸ್ಯರು |
| (iv) | ಹಣಕಾಸು ಅಧಿಕಾರಿ | – ಕಾರ್ಯದರ್ಶಿ |
| (v) | ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು | – ಸದಸ್ಯರು; ಮತ್ತು |
| (vi) | ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು. | |

(2) ಹಣಕಾಸು ಸಮಿತಿಯು ಹಣಕಾಸಿನ ವಿಷಯಗಳನ್ನು ಕೈಗೊಳ್ಳುವ ವಿಶ್ವವಿದ್ಯಾಲಯದ ಪ್ರಧಾನ ಹಣಕಾಸು ಸಂಸ್ಥೆಯಾಗಿರತಕ್ಕದ್ದು ಹಾಗೂ ಅದು ಈ ಅಧಿನಿಯಮ, ನಿಯಮಗಳು ಮತ್ತು ಪರಿನಿಯಮಗಳ ಉಪಬಂಧಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಹಣಕಾಸು ವಿಷಯಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**28. ಇತರ ಪ್ರಾಧಿಕಾರಗಳು.–** ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ರಚನೆ, ಅಧಿಕಾರಗಳು ಹಾಗೂ ಪ್ರಕಾರ್ಯಗಳು ಪರಿನಿಯಮಗಳಿಂದ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

**29. ಒಂದು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯತ್ವಕ್ಕೆ ಅನರ್ಹತೆ.–** ವಿಶ್ವವಿದ್ಯಾಲಯದ ಯಾವುವೇ ಸಂಸ್ಥೆಗಳ ಅಥವಾ ಪ್ರಾಧಿಕಾರಗಳ ಒಬ್ಬ ವ್ಯಕ್ತಿಯು,–

(ಎ) ಅಸ್ವಸ್ಥ ಚಿತ್ತನಾಗಿದ್ದು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿಸಲ್ಪಟ್ಟಿದ್ದರೆ;

(ಬಿ) ಅವಿಮುಕ್ತ ದಿವಾಳಿಯಾಗಿದ್ದರೆ;

(ಸಿ) ನೈತಿಕ ಅಧಃಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದರೆ;

(ಡಿ) ಖಾಸಗಿ ಬೋಧನಾ ತರಗತಿಗಳನ್ನು ನಡೆಸುತ್ತಿದ್ದರೆ ಅಥವಾ ಸ್ವತಃ ನಿರತನಾಗಿದ್ದರೆ;

(ಇ) ಯಾವುದೇ ವಿಧದಲ್ಲಿ, ಎಲ್ಲಿಯೇ, ಯಾವುದೇ ಪರೀಕ್ಷೆಯನ್ನು ನಡೆಸುವಲ್ಲಿ ಅನುಚಿತ ಅಭ್ಯಾಸದಲ್ಲಿ ತೊಡಗಿದ್ದಕ್ಕಾಗಿ ಅಥವಾ ಉತ್ತೇಜಿಸಿದ್ದಕ್ಕಾಗಿ ದಂಡಿತನಾಗಿದ್ದರೆ;

(ಎಫ್) ಪ್ರಾಯೋಜಿತ ಸಂಸ್ಥೆಯು ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಯಾವೊಬ್ಬ ಸದಸ್ಯನನ್ನು ಆ ಪದವನ್ನು ಹೊಂದಿರುವುದಕ್ಕೆ ಅರ್ಹನಲ್ಲನೆಂದು ಲಿಖಿತದಲ್ಲಿ ಅಭಿಪ್ರಾಯ ನೀಡಿದಾಗಲೆಲ್ಲಾ,

– ಸದಸ್ಯನಾಗಿರುವುದಕ್ಕೆ ಅನರ್ಹನಾಗತಕ್ಕದ್ದು.

**30. ಖಾಲಿಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ.**– ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಕಾರ್ಯ ಅಥವಾ ವ್ಯವಹರಣೆಗಳು ಕೇವಲ ಅದರಲ್ಲಿ ಯಾವುದೇ ಖಾಲಿಸ್ಥಾನ ಇದೆ ಎಂಬ ಕಾರಣದಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣದಿಂದ ಮಾತ್ರವೇ ಅಸಿಂಧುವಾಗತಕ್ಕದ್ದಲ್ಲ.

**31. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು.**– (1) ಯಾವುವೇ ಕಾರ್ಯಸೂಚಿ ವಿಷಯಗಳನ್ನು ಕುಲಾಧಿಪತಿಯವರ ಪೂರ್ವಾನುಮೋದನೆಯನ್ನು ಪಡೆಯದೇ ಪ್ರಬಂಧಕ ಮಂಡಳಿಯ ಅಥವಾ ವ್ಯವಸ್ಥಾಪನಾ ಮಂಡಳಿಯ ಅಥವಾ ಯಾವುದೇ ಸಮಿತಿಯ ಸಭೆಗಳ ಕಾರ್ಯಸೂಚಿ ವಿಷಯಗಳಲ್ಲಿ ಸೇರಿಸತಕ್ಕದ್ದಲ್ಲ ಅಥವಾ ಚರ್ಚೆಗೆ ತೆಗೆದುಕೊಳ್ಳತಕ್ಕದ್ದಲ್ಲ ಮತ್ತು ತೀರ್ಮಾನಿಸತಕ್ಕದ್ದಲ್ಲ.

(2) ಈ ಅಧಿನಿಯಮದ ಯಾವುದೇ ಉಪಬಂಧಗಳನ್ನು ಪಾಲಿಸದೆ ಇರುವ ಉಲ್ಲಂಘನೆಯ ಸಂದರ್ಭದಲ್ಲಿ, ಕುಲಾಧಿಪತಿಯವರು ವಿಶ್ವವಿದ್ಯಾಲಯದ ಯಾವುದೇ ಪದಾಧಿಕಾರಿ ಅಥವಾ ಸಂಸ್ಥೆಯು ತೆಗೆದುಕೊಂಡ ಎಲ್ಲಾ ತೀರ್ಮಾನಗಳನ್ನು ವಿಪರ್ಯಯಗೊಳಿಸುವ ಮೂಲಕ ಪರಿಹಾರ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಅಧಿಕಾರವನ್ನು ಎಲ್ಲಾ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಅಂಥ ಪರಿಹಾರ ಕ್ರಮದ ಪರಿಣಾಮವಾಗಿ ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ವಿಶ್ವವಿದ್ಯಾಲಯದ ಪದಾಧಿಕಾರಿ ಅಥವಾ ಸಂಸ್ಥೆಯು ಕೈಗೊಂಡಿದ್ದ ಎಲ್ಲಾ ಅಂಥ ಕ್ರಮಗಳು, ಮೊದಲಿನಿಂದಲೂ ಶೂನ್ಯ ಮತ್ತು ಅಕೃತ ಎಂದು ಭಾವಿಸತಕ್ಕದ್ದು ಹಾಗೂ ತತ್ಪರಿಣಾಮವಾಗಿ, ಉಪಬಂಧ ಪಾಲಿಸದೇ ಇದ್ದ ವಿಷಯ ಅಥವಾ ನಿರ್ಧಾರದ ಸಂಬಂಧದಲ್ಲಿ ಅದಕ್ಕೆ ಮುಂಚೆ ಇದ್ದ ವಸ್ತುಸ್ಥಿತಿಯೇ ಮುಂದುವರಿಯತಕ್ಕದ್ದು.

## ಅಧ್ಯಾಯ – V

## ಪರಿನಿಯಮಗಳು ಮತ್ತು ವಿನಿಯಮಗಳು

**32. ಪರಿನಿಯಮಗಳು.**– ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಪರಿನಿಯಮಗಳು, ವಿಶ್ವವಿದ್ಯಾಲಯಕ್ಕೆ ಮತ್ತು ಸಿಬ್ಬಂದಿಗೆ ಸಂಬಂಧಿಸಿದ ಎಲ್ಲಾ ಅಥವಾ ಯಾವುದೇ ವಿಷಯಕ್ಕೆ ಈ ಕೆಳಗಿನಂತೆ ಉಪಬಂಧ ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಕಾರ್ಯಕಲಾಪಗಳನ್ನು ನಡೆಸುವ ಮತ್ತು ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸದಿರುವ ಸಂಸ್ಥೆಗಳ ರಚನೆಯ ಕಾರ್ಯವಿಧಾನ;

(ii) ಶಾಶ್ವತ ಶಾಸನಬದ್ಧ ದತ್ತಿ ನಿಧಿ, ವಿಶ್ವವಿದ್ಯಾಲಯ ದತ್ತಿ ನಿಧಿ, ಸಾಮಾನ್ಯ ನಿಧಿ ಹಾಗೂ ಅಭಿವೃದ್ಧಿ ನಿಧಿಗಳ ನಿರ್ವಹಣೆ;

(iii) ಕುಲಪತಿಗಳು, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರ ನೇಮಕಾತಿಯ ನಿಬಂಧನೆಗಳು ಹಾಗೂ ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಪ್ರಕಾರ್ಯಗಳು;

(iv) ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ, ಅಧ್ಯಾಪಕರ ಮತ್ತು ನೌಕರರ ನೇಮಕಾತಿ ವಿಧಾನ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(v) ವಿಶ್ವವಿದ್ಯಾಲಯ ಹಾಗೂ ಅದರ ಅಧಿಕಾರಿಗಳು, ವ್ಯಾಸಂಗ ವಿಭಾಗದ (ಫ್ಯಾಕಲ್ಟಿ) ಸದಸ್ಯರು, ನೌಕರರು ಹಾಗೂ ವಿದ್ಯಾರ್ಥಿಗಳ ನಡುವೆ ಉಂಟಾದ ವಿವಾದಗಳನ್ನು ಪರಿಹರಿಸುವ ಕಾರ್ಯವಿಧಾನ;

(vi) ವಿಭಾಗಗಳು ಮತ್ತು ವ್ಯಾಸಂಗ ವಿಭಾಗಗಳ (ಫ್ಯಾಕಲ್ಟಿಗಳ) ಸೃಜನೆ, ರದ್ಧತಿ ಅಥವಾ ಪುನಾರಚನೆ;

(vii) ಇತರ ವಿಶ್ವವಿದ್ಯಾಲಯಗಳು ಅಥವಾ ಉನ್ನತ ಕಲಿಕಾ ಸಂಸ್ಥೆಗಳ ಜೊತೆಯಲ್ಲಿ ಸಹಕರಿಸಬೇಕಾದ ರೀತಿ;

(viii) ಗೌರವ ಪದವಿಗಳ ನೀಡಿಕೆಯ ಕಾರ್ಯವಿಧಾನ;

(ix) ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿವೇತನ ಮಂಜೂರಾತಿಗೆ ಸಂಬಂಧಿಸಿದ ಉಪಬಂಧಗಳು;

(x) ವಿವಿಧ ವ್ಯಾಸಂಗ ಕ್ರಮಗಳಲ್ಲಿನ ಸೀಟುಗಳ ಸಂಖ್ಯೆಗೆ ಸಂಬಂಧಿಸಿದ ಕಾರ್ಯನೀತಿಗಳು ಮತ್ತು ಅಂಥ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಕಾರ್ಯವಿಧಾನ;

(xi) ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಶುಲ್ಕಕ್ಕೆ ಸಂಬಂಧಿಸಿದ ಕಾರ್ಯನೀತಿ;

(xii) ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಉಚಿತ ಶಿಕ್ಷಣ, ಪದಕಗಳು ಹಾಗೂ ಬಹುಮಾನಗಳನ್ನು ಪ್ರಾರಂಭಿಸುವುದು;

(xiii) ಪ್ರಬಂಧಕ ಮಂಡಳಿಯು ನಿರ್ಧರಿಸಬಹುದಾದ ಅಥವಾ ಈ ಅಧಿನಿಯಮದ ಅಡಿಯಲ್ಲಿ ಪರಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬೇಕಾದ ಅಗತ್ಯತೆಯುಳ್ಳ ಯಾವುದೇ ಇತರ ವಿಷಯಗಳು.

**33. ಪರಿನಿಯಮಗಳ ರಚನೆ ವಿಧಾನ.**- (1) ವ್ಯವಸ್ಥಾಪನಾ ಮಂಡಳಿಯು ರಚಿಸಿದ ಮೊದಲ ಶಾಸನಗಳನ್ನು ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ವ್ಯವಸ್ಥಾಪನಾ ಮಂಡಳಿಯು ಸಲ್ಲಿಸಿದ ಮೊದಲ ಪರಿನಿಯಮಗಳನ್ನು ಪ್ರಬಂಧಕ ಮಂಡಳಿಯು ಪರಿಗಣಿಸತಕ್ಕದ್ದು ಹಾಗೂ ತಾನು ಅವಶ್ಯವೆಂದು ಭಾವಿಸಬಹುದಾದ ಅಂಥ ಮಾರ್ಪಾಡುಗಳು, ಯಾವುದಾದರು ಇದ್ದಲ್ಲಿ, ಅವುಗಳೊಡನೆ ತನ್ನ ಅನುಮೋದನೆಯನ್ನು ನೀಡತಕ್ಕದ್ದು.

(3) ವಿಶ್ವವಿದ್ಯಾಲಯವು, ಪ್ರಬಂಧಕ ಮಂಡಳಿಯು ಅನುಮೋದಿಸಿದ ಮೊದಲ ಪರಿನಿಯಮಗಳನ್ನು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ಪ್ರಕಟಿಸತಕ್ಕದ್ದು ಮತ್ತು ತದನಂತರ ಮೊದಲ ಪರಿನಿಯಮಗಳ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**34. ಪರಿನಿಯಮಗಳ ತಿದ್ದುಪಡಿಯ ಅಧಿಕಾರ.**- ಪ್ರಬಂಧಕ ಮಂಡಳಿಯು ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸಬಹುದು ಅಥವಾ ಪರಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ಅವನ್ನು ನಿರಸನಗೊಳಿಸಬಹುದು.

**35. ವಿನಿಯಮಗಳು.**- ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ವಿನಿಯಮಗಳು ಈ ಮುಂದಿನ ಎಲ್ಲಾ ಅಥವಾ ಯಾವುವೇ ವಿಷಯಗಳಿಗೆ ಉಪಬಂಧಗಳನ್ನು ಕಲ್ಪಿಸಬಹುದು, ಎಂದರೆ:-

(i) ವಿಶ್ವವಿದ್ಯಾಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ವಿದ್ಯಾರ್ಥಿ ಪಟ್ಟಿಯಲ್ಲಿ ಅವರುಗಳ ದಾಖಲಾತಿ ಹಾಗೂ ಮುಂದುವರಿಕೆ;

(ii) ವಿಶ್ವವಿದ್ಯಾಲಯದ ಎಲ್ಲಾ ಪದವಿಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ನಿಗದಿಪಡಿಸತಕ್ಕ ವ್ಯಾಸಂಗ ಕ್ರಮಗಳು;

(iii) ಪದವಿಗಳ ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರದಾನ;

(iv) ಸಂಶೋಧನಾ ವೇತನಗಳು (ಫೆಲೋಶಿಪ್), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಪದಕಗಳು ಮತ್ತು ಬಹುಮಾನಗಳನ್ನು ನೀಡಲು ಷರತ್ತುಗಳು;

(v) ಪರೀಕ್ಷೆಗಳನ್ನು ನಡೆಸುವುದು ಹಾಗೂ ಪರೀಕ್ಷೆ ನಡೆಸುವ ಸಂಸ್ಥೆಗಳು, ಪರೀಕ್ಷಕರು, ಪರೀಕ್ಷಾ ಮೇಲ್ವಿಚಾರಕರು, ಟ್ಯಾಬುಲೇಟರ್‌ಗಳು ಮತ್ತು ಮಾಡರೇಟರ್‌ಗಳ ನೇಮಕಾತಿ ಷರತ್ತುಗಳು ಮತ್ತು ವಿಧಾನ ಹಾಗೂ ಅವರ ಕರ್ತವ್ಯಗಳು;

(vi) ವಿಶ್ವವಿದ್ಯಾಲಯದ ಪರೀಕ್ಷೆಗಳ, ಪದವಿಗಳ ಹಾಗೂ ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರವೇಶಕ್ಕೆ ವಿಧಿಸತಕ್ಕ ಶುಲ್ಕ;

(vii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನಲ್ಲಿ ವಿದ್ಯಾರ್ಥಿಗಳ ನಿವಾಸಕ್ಕಾಗಿ ಷರತ್ತುಗಳು;

(viii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಶಿಸ್ತು ಪಾಲನೆ;

(ix) ಈ ಅಧಿನಿಯಮದ ಅಡಿಯಲ್ಲಿನ ಪರಿನಿಯಮಗಳಲ್ಲಿ ಉಪಬಂಧ ಕಲ್ಪಿಸಬಹುದಾಂಥ ಇತರ ಎಲ್ಲಾ ವಿಷಯಗಳು.

**36. ವಿನಿಯಮಗಳ ರಚನೆ ವಿಧಾನ.**- ವಿನಿಯಮಗಳನ್ನು ಶೈಕ್ಷಣಿಕ ಪರಿಷತ್ತು ರಚಿಸತಕ್ಕದ್ದು ಹಾಗೂ ವ್ಯವಸ್ಥಾಪನಾ ಮಂಡಳಿಯು ಅನುಮೋದಿಸತಕ್ಕದ್ದು.

**37. ವಿನಿಯಮಗಳ ತಿದ್ದುಪಡಿಗೆ ಅಧಿಕಾರ.–** ವ್ಯವಸ್ಥಾಪನಾ ಮಂಡಳಿಯ ಅನುಮೋದನೆಯೊಡನೆ ಶೈಕ್ಷಣಿಕ ಪರಿಷತ್ತು ಹೊಸ ವಿನಿಯಮಗಳನ್ನು ಅಥವಾ ಹೆಚ್ಚುವರಿ ವಿನಿಯಮಗಳನ್ನು ರಚಿಸಬಹುದು ಅಥವಾ ವಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ನಿರಸನಗೊಳಿಸಬಹುದು.

**38. ಶುಲ್ಕ ನಿಯಂತ್ರಣ ಸಮಿತಿ.–** (1) ಸರ್ಕಾರವು ರಚಿಸಿದ ನಿವೃತ್ತ ಸರ್ವೋಚ್ಚ ನ್ಯಾಯಾಲಯದ ಅಥವಾ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು ಮುಖ್ಯಸ್ಥರಾಗಿರುವ ಮತ್ತು ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ, ಉನ್ನತ ಶಿಕ್ಷಣ ಪ್ರಭಾರದಲ್ಲಿರುವ ಸರ್ಕಾರದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು, ವೈದ್ಯಕೀಯ ಶಿಕ್ಷಣದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು, ಒಬ್ಬ ಮಹಿಳೆಯೂ ಸೇರಿದಂತೆ ಪ್ರಬಂಧಕ ಮಂಡಲಿಯು ನಾಮನಿರ್ದೇಶಿಸಿದ ಇಬ್ಬರು ಶಿಕ್ಷಣ ತಜ್ಞರು ಇವರುಗಳನ್ನು ಒಳಗೊಂಡ ಒಂದು ಶುಲ್ಕ ನಿಯಂತ್ರಣ ಸಮಿತಿಯು, 9ನೇ ಪ್ರಕರಣದ ಅಡಿಯಲ್ಲಿ ಕರ್ನಾಟಕದ ವಿದ್ಯಾರ್ಥಿಗಳಿಗಾಗಿ ಮೀಸಲಿರಿಸಿದ ವಿಶ್ವವಿದ್ಯಾಲಯದ ಸ್ಥಾನಗಳ ಶುಲ್ಕವನ್ನು ನಿಯಂತ್ರಿಸತಕ್ಕದ್ದು. ಸಮಿತಿಯಲ್ಲಿ ಈ ಉದ್ದೇಶಕ್ಕಾಗಿ ಒಬ್ಬರು ಖ್ಯಾತ ಚಾರ್ಟರ್ಡ್ ಅಕೌಂಟೆಂಟ್ ರವರನ್ನು ಸಹ ಸದಸ್ಯನನ್ನಾಗಿ ಸೇರಿಸಿಕೊಳ್ಳತಕ್ಕದ್ದು.

(2) ಸಮಿತಿಯು ವಿಶ್ವವಿದ್ಯಾಲಯದ ಪ್ರವೇಶಗಳ ಮತ್ತು ಶುಲ್ಕದ ಸಂಗ್ರಹಣೆಯ ಅನುಪಾಲನೆಯನ್ನು ನೋಡಿಕೊಳ್ಳತಕ್ಕದ್ದು.

## ಅಧ್ಯಾಯ – VI

## ಸಂಕೀರ್ಣ

**39. ನೌಕರರ ಸೇವಾ ಷರತ್ತುಗಳು.–** (1) ಪರಿನಿಯಮಗಳ ಮತ್ತು ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಥವಾ ನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳು, ಯಾವುದಾದರೂ ಇದ್ದಲ್ಲಿ, ಅವುಗಳಿಗೆ ಒಳಪಟ್ಟು ಪ್ರತಿಯೊಬ್ಬ ನೌಕರನು ಲಿಖಿತ ಕರಾರಿನ ಅಡಿಯಲ್ಲಿ ನೇಮಕಗೊಳ್ಳತಕ್ಕದ್ದು ಮತ್ತು ಅದನ್ನು ವಿಶ್ವವಿದ್ಯಾಲಯದಲ್ಲಿ ಇಟ್ಟುಕೊಳ್ಳತಕ್ಕದ್ದು ಹಾಗೂ ಅದರ ಪ್ರತಿಯನ್ನು ಸಂಬಂಧಪಟ್ಟ ನೌಕರನಿಗೆ ನೀಡತಕ್ಕದ್ದು.

(2) ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಕಾರ್ಯವಿಧಾನಗಳ ಮೂಲಕ ನಿಯಂತ್ರಿಸತಕ್ಕದ್ದು.

(3) ಕರಾರಿನಿಂದಾಗಿ ವಿಶ್ವವಿದ್ಯಾಲಯ ಮತ್ತು ನೌಕರನ ಮಧ್ಯದಲ್ಲಿ ಉದ್ಭವಿಸಬಹುದಾದ ಯಾವುದೇ ವಿವಾದವನ್ನು, ಲಿಖಿತ ಕರಾರಿನಲ್ಲಿ ಉಪಬಂಧಿಸಿದ ವಿಧಾನದಲ್ಲಿ ಹಾಗೂ ಪರಿನಿಯಮಗಳ ಅನುಸಾರವಾಗಿ ಪರಿಹರಿಸತಕ್ಕದ್ದು.

**40. ಮೇಲ್ಮನವಿ ಹಕ್ಕು.–** ವಿಶ್ವವಿದ್ಯಾಲಯವು ತನ್ನ ನೌಕರರ ಅಥವಾ ವಿದ್ಯಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡ ಸಂದರ್ಭದಲ್ಲಿ, ಬಾಧಿತ ನೌಕರ ಅಥವಾ ವಿದ್ಯಾರ್ಥಿಗಳು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಅಂಥ ಪ್ರಾಧಿಕಾರಕ್ಕೆ ಮೇಲ್ಮನವಿಯನ್ನು ಸಲ್ಲಿಸುವ ಹಕ್ಕನ್ನು ಹೊಂದಿರತಕ್ಕದ್ದು.

**41. ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿ .–** ವಿಶ್ವವಿದ್ಯಾಲಯವು, ತನ್ನ ನೌಕರರ ಪ್ರಯೋಜನಕ್ಕಾಗಿ, ಪರಿನಿಯಮಗಳು ಮತ್ತು ಜಾರಿಯಲ್ಲಿರುವ ಕಾನೂನುಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿಯನ್ನು ರಚಿಸತಕ್ಕದ್ದು ಹಾಗೂ ಅಂಥ ವಿಮಾ ಯೋಜನೆಗಳನ್ನು ಒದಗಿಸತಕ್ಕದ್ದು.

**42. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಇತರ ಸಂಸ್ಥೆಯ ಸದಸ್ಯನಾಗಿ ಯಾವೊಬ್ಬ ವ್ಯಕ್ತಿಯು ಸೂಕ್ತವಾಗಿ ಆಯ್ಕೆಯಾಗಿದ್ದಾನೆಯೇ ಅಥವಾ ನೇಮಕಗೊಂಡಿದ್ದಾನೆಯೇ ಅಥವಾ ಅದಕ್ಕೆ ಅರ್ಹನಾಗಿದ್ದಾನೆಯೇ ಎಂಬ ಯಾವುದೇ ಪ್ರಶ್ನೆ ಉದ್ಭವಿಸಿದರೆ, ಆ ವಿಷಯವನ್ನು ತೀರ್ಮಾನಕ್ಕಾಗಿ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**43. ಸಮಿತಿಗಳ ರಚನೆ.–** 22ನೇ ಪ್ರಕರಣದಲ್ಲಿ ನಮೂದಿಸಿದ ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಅಧಿಕಾರವನ್ನು ಹೊಂದಿರುವ ಅಂಥ ಸದಸ್ಯರನ್ನು ಒಳಗೊಂಡ ಅಂಥ ಪ್ರಾಧಿಕಾರದ ಒಂದು ಸಮಿತಿಯನ್ನು ರಚಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**44. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು.**– ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಂಸ್ಥೆಯ ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ಪೈಕಿ ಯಾವುದೇ ಸ್ಥಾನವು ಆಕಸ್ಮಿಕವಾಗಿ ಖಾಲಿಯಾದರೆ, ಯಾರ ಸ್ಥಾನವು ಖಾಲಿಯಾಗಿ ತುಂಬಬೇಕಾಗಿ ಬಂದಿದೆಯೋ ಆ ಸದಸ್ಯನನ್ನು ಯಾವ ರೀತಿಯಲ್ಲಿ ಆರಿಸಲಾಗಿತ್ತೋ ಅದೇ ರೀತಿಯಲ್ಲಿ ಹೊಸ ಸದಸ್ಯನನ್ನು ಆರಿಸಿ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ಖಾಲಿ ಸ್ಥಾನವನ್ನು ಭರ್ತಿ ಮಾಡಿದ ವ್ಯಕ್ತಿಯು ಆತನು ಯಾವ ಸದಸ್ಯನ ಸ್ಥಾನದಲ್ಲಿ ಭರ್ತಿಯಾಗಿರುವನೋ ಆ ಸದಸ್ಯನು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯನಾಗಿ ಉಳಿಯುತ್ತಿದ್ದ ಬಾಕಿ ಅವಧಿಯವರೆಗೆ ಮಾತ್ರ ಸದಸ್ಯನಾಗಿರತಕ್ಕದ್ದು.

**45. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.**– ಈ ಅಧಿನಿಯಮ ಅಥವಾ ಪರಿನಿಯಮಗಳು ಅಥವಾ ನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ವಿಶ್ವವಿದ್ಯಾಲಯದ ಯಾವೊಬ್ಬ ಅಧಿಕಾರಿ ಅಥವಾ ಇತರ ನೌಕರರ ವಿರುದ್ಧ ಯಾವುದೇ ದಾವೆ ಅಥವಾ ಇತರ ಕಾನೂನು ವ್ಯವಹರಣೆಗಳನ್ನು ನಡೆಸಲು ಅವಕಾಶ ಇರತಕ್ಕದ್ದಲ್ಲ.

**46. ತಾತ್ಕಾಲಿಕ ಉಪಬಂಧಗಳು.**– ಈ ಅಧಿನಿಯಮ ಮತ್ತು ಪರಿನಿಯಮಗಳ ಯಾವುದೇ ಇತರ ಉಪಬಂಧಗಳಲ್ಲಿ ಏನೇ ಇದ್ದರೂ,–

(i) ಮೊದಲ ಕುಲಪತಿ ಮತ್ತು ಸಹಕುಲಪತಿ, ಯಾರಾದರೂ ಇದ್ದರೆ, ಅವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(ii) ಮೊದಲ ಕುಲಸಚಿವರನ್ನು ಮತ್ತು ಮೊದಲ ಹಣಕಾಸು ಅಧಿಕಾರಿಯವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು; ಮತ್ತು

(iii) ಮೊದಲ ವ್ಯವಸ್ಥಾಪನ ಮಂಡಳಿ, ಮೊದಲ ಹಣಕಾಸು ಸಮಿತಿ, ಮೊದಲ ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಹಾಗೂ ಮೊದಲ ಶೈಕ್ಷಣಿಕ ಪರಿಷತ್ತನ್ನು ಕುಲಾಧಿಪತಿಯವರು ರಚಿಸತಕ್ಕದ್ದು.

**47. ಶಾಶ್ವತ ಶಾಸನಬದ್ಧ ದತ್ತಿ ನಿಧಿ.**– (1) ವಿಶ್ವವಿದ್ಯಾಲಯವು ಕನಿಷ್ಠ ಇಪ್ಪತ್ತೈದು ಕೋಟಿ ರೂಪಾಯಿಗಳನ್ನುಳ್ಳ ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು ಇದರ ಪೈಕಿ ಕನಿಷ್ಠ ಹದಿನೈದು ಕೋಟಿ ರೂಪಾಯಿಗಳನ್ನು ನಗದು ರೂಪದಲ್ಲಿ ಮತ್ತು ಇನ್ನುಳಿದದ್ದು ಬ್ಯಾಂಕ್ ಗ್ಯಾರೆಂಟಿ ರೂಪದಲ್ಲಿ ಇರತಕ್ಕದ್ದು ಮತ್ತು ಇದನ್ನು ತಾನಾಗಿಯೇ ಹೆಚ್ಚಿಸಬಹುದಾಗಿದ್ದು ಆದರೆ ಕಡಿಮೆ ಮಾಡತಕ್ಕದ್ದಲ್ಲ:

ಪರಂತು, ಬೆಂಗಳೂರು ಅಥವಾ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊರಗಿರುವ ವಿಶ್ವವಿದ್ಯಾಲಯದ ಸಂದರ್ಭದಲ್ಲಿ ಕನಿಷ್ಠ ಹತ್ತು ಕೋಟಿ ರೂಪಾಯಿಗಳು ನಗದು ರೂಪದಲ್ಲಿರತಕ್ಕದ್ದು ಮತ್ತು ಉಳಿದ ಐದು ಕೋಟಿ ರೂಪಾಯಿಗಳು ಬ್ಯಾಂಕ್ ಗ್ಯಾರಂಟಿಯ ರೂಪದಲ್ಲಿರತಕ್ಕದ್ದು.

(2) ವಿಶ್ವವಿದ್ಯಾಲಯವು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಹಣವನ್ನು ಹೂಡಲು ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯವು ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಗೆ ವರ್ಗಾವಣೆ ಮಾಡಬಹುದು. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನೂ ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(4) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಿದ ವರಮಾನದ ಶೇಕಡಾ ಎಪ್ಪತ್ತೈದರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತೈದರಷ್ಟನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಯಲ್ಲಿ ಪುನ: ತೊಡಗಿಸತಕ್ಕದ್ದು.

**48. ವಿಶ್ವವಿದ್ಯಾಲಯದ ದತ್ತಿ ನಿಧಿ.**– (1) ವಿಶ್ವವಿದ್ಯಾಲಯವು, ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ನಿಧಿಗಳನ್ನು ಒಳಗೊಂಡ ವಿಶ್ವವಿದ್ಯಾಲಯದ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದು ಕಾಲಕಾಲಕ್ಕೆ ಸ್ವೀಕರಿಸಬಹುದಾದ ದೇಣಿಗೆಗಳು ಮತ್ತು ಇತರ ನಿಧಿಗಳನ್ನು ಒಳಗೊಂಡಿರತಕ್ಕದ್ದು.

(2) ವಿಶ್ವವಿದ್ಯಾಲಯವು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ವಿಶ್ವವಿದ್ಯಾಲಯದ ದತ್ತಿನಿಧಿಯನ್ನು ಹೂಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯ ದತ್ತಿ ನಿಧಿಯು, ವಿಶ್ವವಿದ್ಯಾಲಯವು ತನ್ನ ಸಾಮಾಜಿಕ ಧ್ಯೇಯೋದ್ದೇಶಗಳನ್ನು ನೆರವೇರಿಸುವ ಸಂದರ್ಭದಲ್ಲಿ ಮತ್ತು/ಅಥವಾ ಮುಂಗಾಣದ ಸನ್ನಿವೇಶದಲ್ಲಿ ಉದ್ಭವಿಸಬಹುದಾದ ಹಣಕಾಸು ಸವಾಲುಗಳಿಂದ ತನ್ನನ್ನು

ರಕ್ಷಿಸಿಕೊಳ್ಳುವುದಕ್ಕಾಗಿ, ಸ್ವಇಚ್ಛೆಯಿಂದ ನಿರ್ವಹಿಸಿಕೊಂಡು ಬರಲು ಮತ್ತು ಜವಾಬ್ದಾರಿಯಿಂದ ಹಣ ಹೂಡಿಕೆ ಮಾಡಲು ಇಚ್ಛೆಯುಳ್ಳವರಾಗಿ ಸ್ವಯಂ ವಿಧಿಸಿಕೊಂಡ ನಿಧಿಯಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಗೆ ವರ್ಗಾಯಿಸಬಹುದು. ವಿಶ್ವವಿದ್ಯಾಲಯದ ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನು ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(5) ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಬರುವ ವರಮಾನದ ಶೇಕಡಾ ಎಂಭತ್ತರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸದ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತರಷ್ಟನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**49. ಸಾಮಾನ್ಯ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಸಾಮಾನ್ಯ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯವು ವಿಧಿಸಬಹುದಾದ ಎಲ್ಲಾ ಶುಲ್ಕಗಳು;

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೆ ಇರುವ ಯಾವುದೇ ಇತರ ಮೂಲದಿಂದ ಸ್ವೀಕರಿಸಲಾದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ದೇಣಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು;

(2) ಸಾಮಾನ್ಯ ನಿಧಿಗೆ ಜಮಾ ಮಾಡುವ ನಿಧಿಗಳನ್ನು ವಿಶ್ವವಿದ್ಯಾಲಯದ ಎಲ್ಲಾ ಆವರ್ತಕ ವೆಚ್ಚಗಳನ್ನು ಭರಿಸಲು ಉಪಯೋಗಿಸಕೊಳ್ಳತಕ್ಕದ್ದು.

**50. ಅಭಿವೃದ್ಧಿ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಅಭಿವೃದ್ಧಿ ನಿಧಿಯನ್ನು ಸಹ ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಅಭಿವೃದ್ಧಿ ಶುಲ್ಕಗಳು;

(ii) ವಿಶ್ವವಿದ್ಯಾಲಯದ ಅಭಿವೃದ್ಧಿಯ ಉದ್ದೇಶಗಳಿಗಾಗಿ ಯಾವುದೇ ಇತರ ಮೂಲಗಳಿಂದ ಸ್ವೀಕರಿಸಿದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ವಂತಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು; ಮತ್ತು

(v) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಲಾದ ಎಲ್ಲಾ ವರಮಾನಗಳು.

(2) ಅಭಿವೃದ್ಧಿ ನಿಧಿಗೆ ಕಾಲಕಾಲಕ್ಕೆ ಜಮಾ ಮಾಡಿದ ನಿಧಿಯನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಉಪಯೋಗಿಸಕೊಳ್ಳತಕ್ಕದ್ದು.

**51. ನಿಧಿಗಳ ನಿರ್ವಹಣೆ.–** 47, 48, 49 ಮತ್ತು 50ನೇ ಪ್ರಕರಣಗಳಡಿಯಲ್ಲಿ ಸ್ಥಾಪಿಸಲಾದ ನಿಧಿಗಳನ್ನು ಪ್ರಬಂಧಕ ಮಂಡಳಿಯ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ನಿಯಂತ್ರಿಸತಕ್ಕದ್ದು ಹಾಗೂ ನಿರ್ವಹಿಸತಕ್ಕದ್ದು.

**52. ವಾರ್ಷಿಕ ವರದಿ.–** (1) ವಿಶ್ವವಿದ್ಯಾಲಯದ ವಾರ್ಷಿಕ ವರದಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ಅದರ ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಪ್ರಬಂಧಕ ಮಂಡಳಿಯು ವಾರ್ಷಿಕ ವರದಿಯನ್ನು ತನ್ನ ಸಭೆಯಲ್ಲಿ ಪರಿಗಣಿಸತಕ್ಕದ್ದು ಹಾಗೂ ಅದನ್ನು ಮಾರ್ಪಾಡುಗಳೊಡನೆ ಅಥವಾ ಮಾರ್ಪಾಡುಗಳಿಲ್ಲದೆ ಅನುಮೋದಿಸಬಹುದು.

(3) ಪ್ರಬಂಧಕ ಮಂಡಳಿಯು ಸೂಕ್ತವಾಗಿ ಅನುಮೋದಿಸಿದ ವಾರ್ಷಿಕ ವರದಿಯ ಒಂದು ಪ್ರತಿಯನ್ನು ಪ್ರತಿವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ಡಿಸೆಂಬರ್ 31ಕ್ಕೆ ಮೊದಲು ಸಂದರ್ಶಕರಿಗೆ ಮತ್ತು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**53. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.–** (1) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕ ಪತ್ರ ಮತ್ತು ಜಮಾ ಖರ್ಚು ಪಟ್ಟಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯಕ್ಕೆ ಎಲ್ಲಾ ಮೂಲಗಳಿಂದ ಪ್ರಾಪ್ತವಾಗುವ ಅಥವಾ ಸ್ವೀಕರಿಸಲಾಗುವ ಎಲ್ಲಾ ನಿಧಿಗಳು ಹಾಗೂ ವಿತರಿಸಿದ ಅಥವಾ ಸಂದಾಯ ಮಾಡಿದ ಎಲ್ಲಾ ಮೊಬಲಗುಗಳನ್ನು ವಿಶ್ವವಿದ್ಯಾಲಯವು ನಿರ್ವಹಿಸುವ ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕಪತ್ರಗಳನ್ನು ಪ್ರತಿ ವರ್ಷವೂ ಭಾರತದ ಚಾರ್ಟೆಡ್ ಅಕೌಂಟೆಂಟ್‌ಗಳ ಸಂಸ್ಥೆಯ ಸದಸ್ಯರಾಗಿರುವ ಒಬ್ಬ ಲೆಕ್ಕಪರಿಶೋಧಕರಿಂದ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಲೆಕ್ಕಪರಿಶೋಧನಾ ವರದಿಯೊಡನೆ, ಪ್ರತಿ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ನವೆಂಬರ್ 30ಕ್ಕೆ ಮೊದಲು ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(4) ವಾರ್ಷಿಕ ಲೆಕ್ಕಪತ್ರಗಳು, ಜಮಾಖರ್ಚು ಪಟ್ಟಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಪ್ರಬಂಧಕ ಮಂಡಳಿಯು ತನ್ನ ಸಭೆಯಲ್ಲಿ ಪರ್ಯಾಲೋಚಿಸತಕ್ಕದ್ದು ಮತ್ತು ಪ್ರಬಂಧಕ ಮಂಡಳಿಯು ಅದನ್ನು ತನ್ನ ಅಭಿಪ್ರಾಯಗಳೊಡನೆ ಸಂದರ್ಶಕರಿಗೆ ಹಾಗೂ ಸರ್ಕಾರಕ್ಕೆ ಪ್ರತಿ ವರ್ಷದ ಡಿಸೆಂಬರ್ 31ಕ್ಕೆ ಮೊದಲು ಕಳುಹಿಸತಕ್ಕದ್ದು.

**54. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಮಿತಿಯ ಯಾವುದೇ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ ಅಥವಾ ಗೊತ್ತುವಳಿಯು ಅಥವಾ ವಿಶ್ವವಿದ್ಯಾಲಯದ ಸ್ವಾಧೀನದಲ್ಲಿರುವ ಇತರ ದಾಖಲೆಗಳು ಅಥವಾ ವಿಶ್ವವಿದ್ಯಾಲಯವು ಯುಕ್ತವಾಗಿ ನಿರ್ವಹಿಸುವ ಯಾವುದೇ ರಿಜಿಸ್ಟರ್‌ನಲ್ಲಿಯ ಯಾವುದೇ ನಮೂದುಗಳ ಪ್ರತಿಯನ್ನು, ಅದರ ಮೇಲೆ ಕುಲಸಚಿವರು ಪ್ರಮಾಣೀಕರಿಸಿದ್ದರೆ, ಅದನ್ನು ಅಂಥ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ, ಗೊತ್ತುವಳಿ ಅಥವಾ ದಾಖಲೆ ಅಥವಾ ರಿಜಿಸ್ಟರ್‌ನಲ್ಲಿ ಇರುವ ನಮೂದನ್ನು ಮೇಲ್ನೋಟದ ಸಾಕ್ಷ್ಯವೆಂಬುದಾಗಿ ಸ್ವೀಕರಿಸತಕ್ಕದ್ದು ಮತ್ತು ವಿಷಯಗಳ ಸಾಕ್ಷಿಯಾಗಿ ಅಂಗೀಕರಿಸತಕ್ಕದ್ದು ಹಾಗೂ ಮೂಲ ದಾಖಲೆಗಳನ್ನೇ ಸಲ್ಲಿಸಿದ್ದರೆ ಅದನ್ನು, ದಾಖಲಿಸಿರುವ ವಿಷಯಗಳು ಮತ್ತು ವಹಿವಾಟುಗಳ ಸಾಕ್ಷ್ಯವಾಗಿ ಅಂಗೀಕರಿಸಲಾಗುತ್ತಿತ್ತೋ, ಅದೇ ರೀತಿಯಲ್ಲಿ ಇವನ್ನೂ ಸಾಕ್ಷ್ಯವಾಗಿ ಅಂಗೀಕರಿಸತಕ್ಕದ್ದು.

**55. ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ.–** ರಾಜ್ಯಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಥವಾ ಅದರಲ್ಲಿ ಇರುವ ಯಾವುವೇ ಉಪಬಂಧಗಳನ್ನು ಅಥವಾ ಅದರಡಿಯಲ್ಲಿ ರಚಿಸಿದ ಯಾವುವೇ ನಿಯಮಗಳು ಅಥವಾ ಆದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿರ್ದೇಶನ ನೀಡುವುದು ಅವಶ್ಯವೆಂದು ಅಥವಾ ಉಚಿತವೆಂದು ಅಭಿಪ್ರಾಯಪಟ್ಟಲ್ಲಿ ಅದು ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ ಅಥವಾ ಸಂದರ್ಭಾನುಸಾರವಾಗಿ ವ್ಯವಸ್ಥಾಪನಾ ಮಂಡಳಿಯು ಅಂಥ ಪ್ರತಿಯೊಂದು ನಿರ್ದೇಶನವನ್ನು ಪಾಲಿಸತಕ್ಕದ್ದು.

**56. ದಂಡಗಳು.–** (1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿತವಾದ ನಿಯಮಗಳು ಉಪಬಂಧಗಳನ್ನು ಅಥವಾ ಯಾವುದೇ ಪರೀಕ್ಷಾ ವಿಷಯಗಳನ್ನು ಅಥವಾ ಪದವಿಗಳನ್ನು ನೀಡುವುದಕ್ಕೆ ಅಥವಾ ಅಂಕಪಟ್ಟಿಗಳನ್ನು ನೀಡುವುದಕ್ಕೆ ಸಂಬಂಧಪಟ್ಟ ವಿಷಯಗಳಲ್ಲಿ ಉಲ್ಲಂಘನೆಗಳನ್ನು ಮಾಡುವ ಯಾವೊಬ್ಬ ವ್ಯಕ್ತಿಯು, ಅಪರಾಧ ನಿರ್ಣಯವಾದ ಮೇಲೆ, ಐವತ್ತು ಸಾವಿರ ರೂಪಾಯಿಗಳಿಗೆ ಕಡಿಮೆಯಲ್ಲದ ಆದರೆ ಹತ್ತು ಲಕ್ಷ ರೂಪಾಯಿಗಳ ವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಆರು ತಿಂಗಳ ಅವಧಿಗಿಂತ ಕಡಿಮೆಯಲ್ಲದ ಆದರೆ ಎರಡು ವರ್ಷಗಳ ಅವಧಿಯವರೆಗೆ ವಿಸ್ತರಿಸಬಹುದಾದ ಕಾರಾವಾಸದಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು:

ಪರಂತು, ವಿಶ್ವವಿದ್ಯಾಲಯವೂ ಸಹ ಒಳಗೊಂಡಿರುವಲ್ಲಿ, ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಈ ಅಧಿನಿಯಮದ ಅಡಿಯಲ್ಲಿ ನೀಡಲಾದ ಅನುಮತಿ ಪತ್ರವನ್ನು ಹಿಂತೆಗೆದುಕೊಳ್ಳತಕ್ಕದ್ದು.

(2) ಈ ಪ್ರಕರಣದ ಅಡಿಯಲ್ಲಿನ ದಂಡವನ್ನು ಇತರ ಯಾವುದೇ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಲಾದ ದಂಡಕ್ಕೆ ಬಾಧಕವಾಗದಂತೆ ವಿಧಿಸಬಹುದು.

**57. ಪ್ರವೇಶಿಸುವ ಮತ್ತು ಪರಿಶೋಧಿಸುವ ಅಧಿಕಾರ.–** ಈ ಉದ್ದೇಶಕ್ಕಾಗಿ, ರಾಜ್ಯಸರ್ಕಾರದಿಂದ ಪ್ರಾಧಿಕೃತಗೊಂಡ 'ಎ' ಸಮೂಹದ ಅಧಿಕಾರಿ ದರ್ಜೆಗಿಂತ ಕಡಿಮೆಇಲ್ಲದ ದರ್ಜೆಯ ಯಾವೊಬ್ಬ ಅಧಿಕಾರಿಯು, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಶನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ 37) ಅಡಿಯಲ್ಲಿ

ನಿರ್ದಿಷ್ಟಪಡಿಸಿರಬಹುದಾದ ಅಂಥ ಷರತ್ತುಗಳಿಗೆ ಒಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ, ಆ ಅಧಿನಿಯಮದ 9ನೇ ಪ್ರಕರಣದ ಅಡಿಯಲ್ಲಿ ಉಪಬಂಧಿಸಲಾದಂತಹವೇ ಅಧಿಕಾರಗಳನ್ನು ಚಲಾಯಿಸಲು ಮತ್ತು ಪ್ರಕಾರ್ಯಗಳನ್ನು ನೆರವೇರಿಸಲು ಅಧಿಕೃತನಾದ ಅಧಿಕಾರಿ ಎಂಬುದಾಗಿ ಭಾವಿಸತಕ್ಕದ್ದು.

**58. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ನಿರ್ದೇಶನವನ್ನು ನೀಡುವ ಅಧಿಕಾರ.–** (1) ವಿಶ್ವವಿದ್ಯಾಲಯವು ತನ್ನ ರಚನೆ ಅಥವಾ ನಿಗಮನವನ್ನು ನಿಯಂತ್ರಿಸುವ ಕಾನೂನಿಗೆ ಅನುಸಾರವಾಗಿ ತನ್ನ ಸಮಾಪನವನ್ನು ಉದ್ದೇಶಿಸಿದ್ದಲ್ಲಿ, ಅದು ಕನಿಷ್ಠ ಆರು ತಿಂಗಳ ಲಿಖಿತ ಪೂರ್ವ ಸೂಚನೆಯನ್ನು (ನೋಟೀಸು) ಸರ್ಕಾರಕ್ಕೆ ನೀಡತಕ್ಕದ್ದು.

(2) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಈ ಕೆಳಗಿನವುಗಳ ಬಗ್ಗೆ, ಎಂದರೆ:–

(i) ಪದವಿಯನ್ನು ನೀಡುವುದಕ್ಕಾಗಿ ಬೋಧನೆಯ ಗುಣಮಟ್ಟ;

(ii) ಶಿಕ್ಷಣದ ಗುಣಮಟ್ಟ;

(iii) ಉನ್ನತ ಶಿಕ್ಷಣದ ವ್ಯಾಪಾರೀಕರಣವನ್ನು ತಡೆಗಟ್ಟುವುದು;

(iv) ಅಧಿನಿಯಮದ ಉಪಬಂಧಗಳ ಉಲ್ಲಂಘನೆಯ ಬಗ್ಗೆ, ಯಾವುದಾದರೂ ಇದ್ದಲ್ಲಿ,

– ಇವುಗಳ ಬಗ್ಗೆ ನಿಯತಕಾಲಿಕ ಪರಿವೀಕ್ಷಣೆಯನ್ನು ನಡೆಸತಕ್ಕದ್ದು ಮತ್ತು ಸರ್ಕಾರಕ್ಕೆ ವರದಿಯನ್ನು ಕಳುಹಿಸತಕ್ಕದ್ದು.

(3) ದುರ್ವ್ಯವಹರಣೆ, ದುರಾಡಳಿತ ಮತ್ತು ಅಶಿಸ್ತು ಆಗಿದೆ ಎಂಬುದನ್ನು ಗುರುತಿಸಿದರೆ, ಸರ್ಕಾರವು, ವಿಶ್ವವಿದ್ಯಾಲಯದ ಆಡಳಿತ ವರ್ಗದವರಿಗೆ ಆಡಳಿತವನ್ನು ಸರಿಪಡಿಸಬೇಕೆಂದು ನಿರ್ದೇಶನಗಳನ್ನು ನೀಡತಕ್ಕದ್ದು. ನಿಯಮಿಸಬಹುದಾದ ಅಂಥ ಅವಧಿಯೊಳಗೆ ಆ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುವ ಹಕ್ಕು ಸರ್ಕಾರದಲ್ಲಿ ನಿಹಿತವಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ವಿಧಾನವು, ಸರ್ಕಾರವು ಈ ಸಂಬಂಧದಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು:

ಪರಂತು, ವಿಶ್ವವಿದ್ಯಾಲಯವು ತನ್ನ ಕಾರಣಗಳನ್ನು ಹೇಳಿಕೊಳ್ಳಲು ಸಮಂಜಸ ಅವಕಾಶಗಳನ್ನು ನೀಡಿದ ಹೊರತು ಅಂಥ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

(5) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೋಟೀಸನ್ನು ಸ್ವೀಕರಿಸಿದ ಮೇಲೆ, ಸರ್ಕಾರವು ಸಂಬಂಧಿಸಿದ ನಿಯಂತ್ರಣಾ ಪ್ರಾಧಿಕಾರದೊಡನೆ ಸಮಾಲೋಚಿಸಿ, ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ಅಥವಾ ವ್ಯಾಸಂಗ ಕ್ರಮವನ್ನು ಪರಿಸಮಾಪನಗೊಳಿಸಲು ಉದ್ದೇಶಿಸಿದ ದಿನಾಂಕದಿಂದ, ವಿಶ್ವವಿದ್ಯಾಲಯದಲ್ಲಿ ನಿಯತ ವ್ಯಾಸಂಗ ಕ್ರಮಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕೊನೆಯ ತಂಡ (ಬ್ಯಾಚ್) ತನ್ನ ವ್ಯಾಸಂಗ ಕ್ರಮವನ್ನು ಮುಗಿಸುವವರೆಗೆ ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು.

**59. ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು.–** (1) 58ನೇ ಪ್ರಕರಣದ (5)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ಅದರ ಆಡಳಿತಾತ್ಮಕ ವೆಚ್ಚಗಳನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಭರಿಸತಕ್ಕದ್ದು.

(2) ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ವಿಶ್ವವಿದ್ಯಾಲಯದ ವೆಚ್ಚವನ್ನು ಭರಿಸಲು 47, 48, 49 ಮತ್ತು 50ನೇ ಪ್ರಕರಣಗಳ ಅಡಿಯಲ್ಲಿ ಉಲ್ಲೇಖಿಸಲಾದ ನಿಧಿಯು ಸಾಕಷ್ಟು ಇಲ್ಲದಿದ್ದಲ್ಲಿ, ಅಂಥ ವೆಚ್ಚವನ್ನು ಸರ್ಕಾರವು, ವಿಶ್ವವಿದ್ಯಾಲಯದ ಸ್ವತ್ತುಗಳು ಮತ್ತು ಆಸ್ತಿಗಳನ್ನು ವಿಲೇ ಮಾಡುವ ಮೂಲಕ ಭರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಸಮಾಪನೆಯು ದುರ್ವ್ಯವಹರಣೆ ಅಥವಾ ದುರಾಡಳಿತದ ಕಾರಣಗಳಿಗಾಗಿ ಆಗಿದ್ದರೆ, ಸರ್ಕಾರವು ಅಂಥ ದುರ್ವ್ಯವಹಾರಕ್ಕೆ ಅಥವಾ ದುರಾಡಳಿತಕ್ಕೆ ಹೊಣೆಯಾಗಿರುವ ವ್ಯಕ್ತಿಗಳನ್ನು ಗುರುತಿಸುವ ಮತ್ತು ಅವರ ಮೇಲೆ ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ದಂಡನೆಯನ್ನು ವಿಧಿಸಲು ಸ್ವತಂತ್ರವಾಗಿರತಕ್ಕದ್ದು.

**60. ತೊಂದರೆಗಳ ನಿವಾರಣೆಗೆ ಅಧಿಕಾರ.–** (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಅಥವಾ ಆದೇಶದ ಮೂಲಕ

ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಐದು ವರ್ಷಗಳು ಮುಕ್ತಾಯವಾದ ತರುವಾಯ ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಅಧಿಸೂಚನೆ ಅಥವಾ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

**61. ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ.–** (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ಹೊರಡಿಸಲಾದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಉಭಯ ಸದನಗಳು ಒಪ್ಪಿದರೆ ತದನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ದತಿಯು ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವನ್ನು ಉಂಟುಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಜಿ.ಕೆ.ಬೋರೇಗೌಡ**

ಸರ್ಕಾರದ ಕಾರ್ಯದರ್ಶಿ

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) (500 ಪ್ರತಿಗಳು)

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ - IV-A<br>Part - IV-A | ಬೆಂಗಳೂರು, ಶುಕ್ರವಾರ, ಏಪ್ರಿಲ್ ೧೨, ೨೦೧೩ (ಚೈತ್ರ ೨೨, ಶಕ ವರ್ಷ ೧೯೩೫)<br>Bangalore, Friday, April 12, 2013 (Chaithra 22, Shaka Varsha 1935) | ನಂ.೬೮೪<br>No. 684 |
|---|---|---|

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಂವ್ಯಶಾಇ 28 ಶಾಸನ 2013, ಬೆಂಗಳೂರು, ದಿನಾಂಕ: 12.04.2013

ಗಾರ್ಡನ್ ಸಿಟಿ ವಿಶ್ವವಿದ್ಯಾಲಯ ವಿಧೇಯಕ, 2013 - ಇದಕ್ಕೆ 2013ರ ಮಾರ್ಚ್ ತಿಂಗಳ ಇಪ್ಪತ್ತಾರನೇ ದಿನಾಂಕದಂದು ಘನತೆವೆತ್ತ ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2013ರ ಕರ್ನಾಟಕ ಅಧಿನಿಯಮ ಸಂಖ್ಯೆ: 47 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

## 2013 ರ ಕರ್ನಾಟಕ ಅಧಿನಿಯಮ ಸಂಖ್ಯೆ: 47

(2013ರ ಏಪ್ರಿಲ್ ಮಾಹೆಯ ಹನ್ನೆರಡನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಗಾರ್ಡನ್ ಸಿಟಿ ವಿಶ್ವವಿದ್ಯಾಲಯ ಅಧಿನಿಯಮ, 2013

(2013ರ ಮಾರ್ಚ್ ಮಾಹೆಯ ಇಪ್ಪತ್ತಾರನೇ ದಿನಾಂಕದಂದು ರಾಜ್ಯಪಾಲರ ಅನುಮತಿಯನ್ನು ಪಡೆಯಲಾಗಿದೆ)

ಸಾಮಾನ್ಯ, ತಾಂತ್ರಿಕ, ಆರೋಗ್ಯ, ವ್ಯವಸ್ಥಾಪನೆ, ಜೀವ ವಿಜ್ಞಾನ ಮತ್ತು ತತ್ಸಂಬಂಧಿ ವಲಯಗಳಲ್ಲಿ ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಉತ್ತೇಜಿಸಲು ಮತ್ತು ಕೈಗೊಳ್ಳಲು ಗಾರ್ಡನ್ ಸಿಟಿ ಎಜುಕೇಷನ್ ಟ್ರಸ್ಟ್ ಮೂಲಕ ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದಕ್ಕಾಗಿ ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಸಾಮಾನ್ಯ, ತಾಂತ್ರಿಕ, ಆರೋಗ್ಯ, ವ್ಯವಸ್ಥಾಪನೆ, ಜೀವ ವಿಜ್ಞಾನಗಳು ಮತ್ತು ತತ್ಸಂಬಂಧಿ ವಲಯಗಳಲ್ಲಿ ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಉತ್ತೇಜಿಸಲು ಮತ್ತು ಕೈಗೊಳ್ಳಲು ಗಾರ್ಡನ್ ಸಿಟಿ ಎಜುಕೇಷನ್ ಟ್ರಸ್ಟ್ ಮೂಲಕ ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತಾಲ್ಕನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

### ಅಧ್ಯಾಯ - I

### ಪ್ರಾರಂಭಿಕ

1. **ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಗಾರ್ಡನ್ ಸಿಟಿ ವಿಶ್ವವಿದ್ಯಾಲಯ ಅಧಿನಿಯಮ, 2013 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

2. **ಪರಿಭಾಷೆಗಳು.-** ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) "ಶೈಕ್ಷಣಿಕ ಪರಿಷತ್ತು (ಅಕೆಡೆಮಿಕ್ ಕೌನ್ಸಿಲ್)" ಎಂದರೆ, 25ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿಸಲಾದ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು;

(ಬಿ) "ಕಾರ್ಯಸೂಚಿ ವಿಷಯಗಳು", ಎಂದರೆ, ಪರಿನಿಯಮಗಳಲ್ಲಿ ಹೆಸರಿಸಬಹುದಾದ ಮತ್ತು ಒಂದು ಸಭೆಯಲ್ಲಿ ಆ ವಿಷಯಗಳನ್ನು ಮತ್ತು ಕಲಾಪಗಳನ್ನು ಅನುಮೋದಿಸಬಹುದೆಂದು ತಮ್ಮ ಸಮ್ಮತಿ ಸೂಚಿಸಿ ಕುಲಾಧಿಪತಿಯವರು ಮುಂಚಿತವಾಗಿಯೇ ಲಿಖಿತ ಅನುಮೋದನೆಯನ್ನು ಕೊಟ್ಟಿದ್ದಾಗ ಮಾತ್ರವೇ ಸಂದರ್ಭಾನುಸಾರ ಪ್ರಬಂಧಕರ ಮಂಡಳಿ ಅಥವಾ ವ್ಯವಸ್ಥಾಪನಾ ಮಂಡಳಿ ಅಥವಾ ಯಾವುದೇ ಸಮಿತಿಯವರು ಕಾರ್ಯಸೂಚಿಯಲ್ಲಿ ಸೇರಿಸಬಹುದಾದ ಅಥವಾ ಸಭೆಯಲ್ಲಿ ಚರ್ಚೆಗೆ ತೆಗೆದುಕೊಂಡು ನಿರ್ಣಯವನ್ನು ಕೊಡಬಹುದಾದ ಎಲ್ಲಾ ವಿಷಯಗಳು ಮತ್ತು ಕಲಾಪಗಳು;

(ಸಿ) "ಪ್ರಬಂಧಕರ ಮಂಡಳಿ" ಎಂದರೆ, 23ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಪ್ರಬಂಧಕರ ಮಂಡಳಿ;

(ಡಿ) "ವ್ಯವಸ್ಥಾಪನಾ ಮಂಡಳಿ" ಎಂದರೆ 24ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದಂತೆ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿ ;

(ಇ) "ಕುಲಾಧಿಪತಿ", "ಕುಲಪತಿ", "ಸಹಕುಲಪತಿ" ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ ಮತ್ತು ಸಹಕುಲಪತಿ;

(ಎಫ್) "ಕ್ಯಾಂಪಸ್" ಎಂದರೆ, ಅದು ಎಲ್ಲಾದರೂ ಇರಲಿ ವಿಶ್ವವಿದ್ಯಾಲಯವು ಸ್ಥಾಪಿಸಿದ, ನಿರ್ವಹಿಸುವ ಒಂದು ಕ್ಯಾಂಪಸ್;

(ಜಿ) "ಸಮಿತಿಗಳು" ಎಂದರೆ, ಈ ಅಧಿನಿಯಮದಡಿಯಲ್ಲಿ ರೂಪಿಸಲಾದ ಸಮಿತಿಗಳು ಅಥವಾ ಸಂದರ್ಭಾನುಸಾರವಾಗಿ ವಿಶ್ವವಿದ್ಯಾಲಯದ ವಿವಿಧ ಕಾರ್ಯಕರ್ತರು ರಚಿಸಿರುವ ಸಮಿತಿಗಳು ಮತ್ತು ಅದರಲ್ಲಿ ಶೋಧನಾ ಸಮಿತಿ, ನಾಮನಿರ್ದೇಶನ ಸಮಿತಿ, ಹಣಕಾಸು ಸಮಿತಿ, ಹಣಕಾಸು ಪರಿಷತ್ತು ಮತ್ತು ಅಂಥ ಇತರ ಸಮಿತಿಗಳು ಒಳಗೊಳ್ಳುತ್ತವೆ;

(ಎಚ್) "ಘಟಕ ಕಾಲೇಜು" ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುತ್ತಿರುವ ಒಂದು ಕಾಲೇಜು ಅಥವಾ ಸಂಸ್ಥೆ;

(ಐ) "ಹಣಕಾಸು ಸಮಿತಿ" ಎಂದರೆ, 27ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಹಣಕಾಸು ಸಮಿತಿ;

(ಜೆ) "ಸರ್ಕಾರ" ಎಂದರೆ, ಕರ್ನಾಟಕ ಸರ್ಕಾರ;

(ಕೆ) "ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳು" ಎಂದರೆ, ವಿಶ್ವವಿದ್ಯಾಲಯ ಅನುದಾನ ಆಯೋಗ, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು, ಭಾರತೀಯ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಪರಿಷತ್ತು, ಭಾರತೀಯ ಔಷಧ ವಿಜ್ಞಾನ ಪರಿಷತ್ತು, ಭಾರತೀಯ ಕೃಷಿ ಸಂಶೋಧನಾ ಪರಿಷತ್ತು, ರಾಷ್ಟ್ರೀಯ ಮೌಲ್ಯಮಾಪನ ಮತ್ತು ಅಧಿಮಾನ್ಯತಾ ಪರಿಷತ್ತು, ರಾಷ್ಟ್ರೀಯ ಬೋಧಕ ಶಿಕ್ಷಣ ಪರಿಷತ್ತು, ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಪರಿಷತ್ತು ಮುಂತಾದ, ಉನ್ನತ ಶಿಕ್ಷಣದಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುವಂತೆ ನೋಡಿಕೊಳ್ಳುವುದಕ್ಕಾಗಿ ಗುಣಮಟ್ಟಗಳು ಮತ್ತು ಷರತ್ತುಗಳನ್ನು ವಿಧಿಸುವುದಕ್ಕಾಗಿ, ಕೇಂದ್ರ ಸರ್ಕಾರವು ಸ್ಥಾಪಿಸಿರುವ ಒಂದು ಸಂಸ್ಥೆ ಮತ್ತು ಇದರಲ್ಲಿ ಸರ್ಕಾರವೂ ಸೇರಿರುತ್ತದೆ;

(ಎಲ್) "ನಿಯಮಿಸಲಾದುದು" ಎಂದರೆ, ಈ ಅಧಿನಿಯಮದಡಿಯಲ್ಲಿ ಸರ್ಕಾರವು ರಚಿಸಲಾದ ನಿಯಮಗಳ ಮೂಲಕ ನಿಯಮಿಸಲಾದುದು;

(ಎಂ) "ಒಂದು ಘಟಕ ಕಾಲೇಜಿಗೆ ಸಂಬಂಧಪಟ್ಟಂತೆ ಪ್ರಾಂಶುಪಾಲರು" ಎಂದರೆ, ಘಟಕ ಕಾಲೇಜಿನ ಮುಖ್ಯಸ್ಥರು ಮತ್ತು ಪ್ರಾಂಶುಪಾಲರು ಇಲ್ಲದಿದ್ದಲ್ಲಿ ಅಥವಾ ನೇಮಕವಾದ ಪ್ರಾಂಶುಪಾಲರ ಗೈರುಹಾಜರಿಯಲ್ಲಿ, ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ತಾತ್ಕಾಲಿಕವಾಗಿ ನೇಮಕಗೊಂಡಿರುವ ಉಪಪ್ರಾಂಶುಪಾಲರು ಅಥವಾ ಯಾವುದೇ ಇತರ ವ್ಯಕ್ತಿಯೂ ಇದರಲ್ಲಿ ಒಳಗೊಳ್ಳುತ್ತಾರೆ;

(ಎನ್) "ಕುಲಸಚಿವರು" ಎಂದರೆ, ವಿಶ್ವವಿದ್ಯಾಲಯದ ಕುಲಸಚಿವರು;

(ಒ) "ಪ್ರಾದೇಶಿಕ ಕೇಂದ್ರ" ಎಂದರೆ, ಯಾವುದೇ ಪ್ರದೇಶದಲ್ಲಿನ ಅಧ್ಯಯನ ಕೇಂದ್ರಗಳ ಕಾರ್ಯವನ್ನು ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ಮಾಡುವ ಉದ್ದೇಶಕ್ಕಾಗಿ ಮತ್ತು ಅಂಥ ಕೇಂದ್ರಕ್ಕೆ ಕಾರ್ಯಕಾರಿ ಪರಿಷತ್ತು ವಹಿಸಿಕೊಡಬಹುದಾದ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸುವುದಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಅಥವಾ ನಿರ್ವಹಿಸಿಕೊಂಡುಬರುವ ಒಂದು ಕೇಂದ್ರ;

(ಪಿ) ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ "ಪ್ರಾಯೋಜಕ ಪ್ರಾಧಿಕಾರ" ಅಥವಾ "ಪ್ರಾಯೋಜಕ ಸಂಸ್ಥೆ" ಎಂದರೆ ಪ್ರಾಯೋಜಕ ನ್ಯಾಸ;

(ಕ್ಯೂ) "ಪ್ರಾಯೋಜಕ ನ್ಯಾಸ" ಎಂದರೆ ಭಾರತೀಯ ನ್ಯಾಸ ಅಧಿನಿಯಮ, 1882ರ ಅಡಿಯಲ್ಲಿ ನೋಂದಣಿಯಾದ ಗಾರ್ಡನ್ ಸಿಟಿ ಎಜುಕೇಷನ್ ಟ್ರಸ್ಟ್ ;

(ಆರ್) "ರಾಜ್ಯ" ಎಂದರೆ, ಕರ್ನಾಟಕ ರಾಜ್ಯ;

(ಎಸ್) "ಪರಿನಿಯಮಗಳು" ಮತ್ತು "ವಿನಿಯಮಗಳು" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಅನುಕ್ರಮವಾಗಿ ವಿಶ್ವವಿದ್ಯಾಲಯದ ಪರಿನಿಯಮಗಳು ಮತ್ತು ವಿನಿಯಮಗಳು;

(ಟಿ) "ಅಧ್ಯಯನ ಕೇಂದ್ರ" ಎಂದರೆ, ವಿದ್ಯಾರ್ಥಿಗಳಿಗೆ ಅಗತ್ಯವಾದ ಬುದ್ಧಿವಾದ, ಸಲಹೆಗಳನ್ನು ನೀಡುವ ಅಥವಾ ಇತರ ಯಾವುದೇ ನೆರವನ್ನು ನೀಡುವ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಮತ್ತು ನಿರ್ವಹಿಸಿಕೊಂಡುಬಂದ ಒಂದು ಕೇಂದ್ರ;

(ಯು) "ಅಧ್ಯಾಪಕರು" ಎಂದರೆ, ಒಬ್ಬ ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಒಂದು ಘಟಕ ಕಾಲೇಜಿನಲ್ಲಿ ಬೋಧಿಸುವುದಕ್ಕೆ ಅಥವಾ ಸಂಶೋಧನೆ ನಡೆಸುವುದಕ್ಕೆ ಅಥವಾ ಸಂಶೋಧನೆಗೆ ಮಾರ್ಗದರ್ಶನ ನೀಡುವುದಕ್ಕೆ ನೇಮಕವಾದ ಅಂಥ ಇತರ ವ್ಯಕ್ತಿ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗವು ನಿಯಮಿಸಿದ ಗುಣಮಟ್ಟಗಳಿಗೆ ಅನುಸಾರವಾಗಿ ಇರುವ ಘಟಕ ಕಾಲೇಜಿನ ಪ್ರಾಂಶುಪಾಲರು ಇದರಲ್ಲಿ ಒಳಗೊಳ್ಳುತ್ತಾರೆ;

(ವಿ) "ವಿಶ್ವವಿದ್ಯಾಲಯ ಅನುದಾನಗಳ ಆಯೋಗ" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) 4ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ಆಯೋಗ;

(ಡಬ್ಲ್ಯೂ) "ವಿಶ್ವವಿದ್ಯಾಲಯ" ಎಂದರೆ, ಈ ಅಧಿನಿಯಮದಡಿಯಲ್ಲಿ ಸ್ಥಾಪಿಸಿ ನಿಗಮಿತಗೊಳಿಸಲಾದ ಗಾರ್ಡನ್ ಸಿಟಿ ವಿಶ್ವವಿದ್ಯಾಲಯ;

(ಎಕ್ಸ್) "ಸಂದರ್ಶಕರು" ಎಂದರೆ, 13ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ವಿಶ್ವವಿದ್ಯಾಲಯದ ಸಂದರ್ಶಕರು.

## ಅಧ್ಯಾಯ – II

## ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

**3. ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ.–** (1) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಹಕ್ಕನ್ನು ಪ್ರಾಯೋಜಕ ನ್ಯಾಸವು ಹೊಂದಿರತಕ್ಕದ್ದು.

(2) ಪ್ರಾಯೋಜಕ ನ್ಯಾಸವು ರಾಜ್ಯ ಸರ್ಕಾರಕ್ಕೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವವನ್ನು ಸಲ್ಲಿಸತಕ್ಕದ್ದು.

(3) ಪ್ರಸ್ತಾವವು ಈ ಮುಂದಿನ ವಿವರಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಪ್ರಾಯೋಜಕ ನ್ಯಾಸದ ವಿವರಗಳೊಂದಿಗೆ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು;

(ii) ವಿಶ್ವವಿದ್ಯಾಲಯದ ವ್ಯಾಪ್ತಿ ಮತ್ತು ಸ್ಥಾನಮಾನ ಹಾಗೂ ಭೂಮಿಯ ಲಭ್ಯತೆ;

(iii) ಪ್ರಾರಂಭದ ದಿನಾಂಕದಿಂದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳಬೇಕೆಂದಿರುವ ಅಧ್ಯಯನ ಮತ್ತು ಸಂಶೋಧನಾ ಕಾರ್ಯಕ್ರಮಗಳ ಸ್ವರೂಪ ಮತ್ತು ಬಗೆಗಳು;

(iv) ಪ್ರಾರಂಭಿಸಬೇಕೆಂದು ಪ್ರಸ್ತಾಪಿಸಿರುವ ವ್ಯಾಸಂಗ ವಿಭಾಗಗಳು (ಫ್ಯಾಕಲ್ಟಿಗಳು), ಅಧ್ಯಯನ ಕ್ರಮಗಳು ಮತ್ತು ಸಂಶೋಧನೆಗಳ ಸ್ವರೂಪ;

(v) ಕಟ್ಟಡಗಳು, ಸಲಕರಣೆಗಳು ಮತ್ತು ರಚನಾ ಸೌಕರ್ಯಗಳನ್ನು ಒದಗಿಸುವಂಥ ಕ್ಯಾಂಪಸ್ ಅಭಿವೃದ್ಧಿ;

(vi) ಪ್ರಾರಂಭದ ದಿನಾಂಕದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಗಾಗಿ ಬಂಡವಾಳ ವೆಚ್ಚದ ಹಂತಗಳು;

(vii) ಬಾಬುವಾರು ಆವರ್ತಕ ವೆಚ್ಚ, ಆರ್ಥಿಕ ಮೂಲಗಳು ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ತಗಲುವ ಅಂದಾಜು ವೆಚ್ಚ;

(viii) ಸಂಪನ್ಮೂಲ ಸಂಗ್ರಹಣೆಗಾಗಿ ಯೋಜನೆ ಮತ್ತು ಅದಕ್ಕೆ ಬಂಡವಾಳದಿಂದ ತಗಲುವ ವೆಚ್ಚ ಹಾಗೂ ಪ್ರತಿಯೊಂದು ಮೂಲಕ್ಕೂ ಮರು ಸಂದಾಯ ಮಾಡುವ ರೀತಿ;

(ix) ವಿದ್ಯಾರ್ಥಿಗಳಿಂದ ಶುಲ್ಕ ವಸೂಲು ಮಾಡಿ ಆಂತರಿಕವಾಗಿ ನಿಧಿ ಸಂಗ್ರಹಿಸುವ ಯೋಜನೆ, ಸಲಹಾ ಸೇವೆ ಮತ್ತು ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಿಗೆ ಸಂಬಂಧಿಸಿದ ಇತರ ಚಟುವಟಿಕೆಗಳಿಂದ ನಿರೀಕ್ಷಿತ ವರಮಾನಗಳು ಮತ್ತು ಇತರ ನಿರೀಕ್ಷಿತ ವರಮಾನಗಳು;

(x) ಘಟಕವೊಂದಕ್ಕೆ ತಗಲುವ ವೆಚ್ಚದ ವಿವರಗಳು, ಆರ್ಥಿಕವಾಗಿ ದುರ್ಬಲವಾದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕ, ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿ ವೇತನದಲ್ಲಿ ನೀಡುವ ರಿಯಾಯಿತಿ ಅಥವಾ ವಿನಾಯತಿಯ ಪರಿಮಿತಿಯ ವಿವರಗಳನ್ನು ಮತ್ತು ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳಿಗೆ ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳು ಪ್ರಾಯೋಜಿಸಿದ ವಿದ್ಯಾರ್ಥಿಗಳಿಗೆ ಮತ್ತು ಭಾರತವನ್ನುಳಿದು ಇತರ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ವಿಧಿಸತಕ್ಕ ಶುಲ್ಕದ ದರಗಳು ಬೇರೆ ಬೇರೆ ಇದ್ದಲ್ಲಿ ಅವುಗಳನ್ನು ಸೂಚಿಸುವ ಶುಲ್ಕ ರಚನೆಯ ವಿವರಗಳು;

(xi) ಸಂಬಂಧಪಟ್ಟ ವಿದ್ಯಾ ವಿಭಾಗದಲ್ಲಿ ಎಷ್ಟು ವರ್ಷಗಳ ಅನುಭವ ಮತ್ತು ಪರಿಣಿತಿಯನ್ನು ಪ್ರಾಯೋಜಕ ನ್ಯಾಸವು ದೊರಕಿಸಿಕೊಡಲಿದೆ ಹಾಗೂ ಅದರ ಹಣಕಾಸಿನ ಸಂಪನ್ಮೂಲಗಳು;

(xii) ವಿಶ್ವವಿದ್ಯಾಲಯದಲ್ಲಿರುವ ಅಧ್ಯಯನ ಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕಾಗಿ ಇರುವ ವ್ಯವಸ್ಥೆ;

(xiii) ವಿಶ್ವವಿದ್ಯಾಲಯವು ಸ್ಥಾಪನೆಯಾಗುವುದಕ್ಕೆ ಮೊದಲು ನೆರವೇರಿಸಬೇಕೆಂದು ರಾಜ್ಯ ಸರ್ಕಾರವು ಅಗತ್ಯಪಡಿಸಬಹುದಾದ ಅಂಥ ಇತರ ಷರತ್ತುಗಳ ನೆರವೇರಿಕೆಯ ಹಂತ.

(4) ಪ್ರಾಯೋಜಕ ನ್ಯಾಸದಿಂದ ಸ್ವೀಕರಿಸಿದ ಪ್ರಸ್ತಾವಗಳನ್ನು ಪರೀಕ್ಷಿಸಲು ರಾಜ್ಯ ಸರ್ಕಾರವು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಪದನಿಮಿತ್ತ ಸದಸ್ಯರಾದ ಮೂರು ಸದಸ್ಯರುಗಳನ್ನು ಒಳಗೊಂಡ ಒಂದು ಶೋಧನಾ ಸಮಿತಿಯನ್ನು ರಚಿಸತಕ್ಕದ್ದು ಮತ್ತು ಅದು ವಿಶ್ವವಿದ್ಯಾಲಯದ ಸ್ಥಾಪನೆಗೆ ರಾಜ್ಯ ಸರ್ಕಾರಕ್ಕೆ ಶಿಫಾರಸ್ಸನ್ನು ಮಾಡತಕ್ಕದ್ದು.

**4. ವಿಶ್ವವಿದ್ಯಾಲಯದ ಸ್ಥಾಪನೆ.–** (1) ರಾಜ್ಯ ಸರ್ಕಾರವು ಶೋಧನಾ ಸಮಿತಿಯು ಮಾಡಿದ ಶಿಫಾರಸ್ಸುಗಳನ್ನು ಪರಿಶೀಲಿಸಿದ ತರುವಾಯ ಮತ್ತು ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ,–

(i) ನ್ಯಾಸವು ಸಾಕಷ್ಟು ಮೂಲ ಸೌಕರ್ಯದೊಂದಿಗೆ ವಿಶ್ವವಿದ್ಯಾಲಯವೊಂದನ್ನು ನಡೆಸಲು ಸಮರ್ಥವಾಗಿದೆ ಎಂದು ಅದು ಮನಗಂಡರೆ;

(ii) ಪ್ರದೇಶಕ್ಕನುಸಾರವಾಗಿ ಕೆಳಗೆ ನಿರ್ದಿಷ್ಟ ಪಡಿಸಿದ ವ್ಯಾಪ್ತಿಗೆ ಭೂಮಿಯ ಒಡೆತನವನ್ನು ಹೊಂದಿರತಕ್ಕದ್ದು, ಎಂದರೆ:–

(ಎ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯೊಳಗಿದ್ದರೆ ಇಪ್ಪತ್ತೈದು ಎಕರೆಗಳು;

(ಬಿ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯಿಂದ ಹೊರಗೆ ಇದ್ದು, ಆದರೆ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಪ್ರದೇಶದ ಒಳಗೆ ಇದ್ದರೆ ನಲವತ್ತು ಎಕರೆಗಳು;

(ಸಿ) ಭೂಮಿಯು (ಎ) ಮತ್ತು (ಬಿ) ಖಂಡಗಳಲ್ಲಿ ನಿರ್ದಿಷ್ಟಪಡಿಸಿದ ಸ್ಥಳಗಳನ್ನು ಹೊರತುಪಡಿಸಿದ್ದರೆ ಅರವತ್ತು ಎಕರೆಗಳಿಗಿಂತ ಕಡಿಮೆ ಇರತಕ್ಕದ್ದಲ್ಲ.

ಮೇಲೆ ನಿರ್ದಿಷ್ಟಪಡಿಸಿದ ಭೂಮಿಯು ಏಕ ಘಟಕ (ಸಿಂಗಲ್ ಬ್ಲಾಕ್) ದಲ್ಲಿರತಕ್ಕದ್ದು ಮತ್ತು ಇದು ಸಂಬಂಧಪಟ್ಟ ನ್ಯಾಸ/ಪ್ರತಿಷ್ಠಾನ/ಸಂಸ್ಥೆ/ವಿಶ್ವವಿದ್ಯಾಲಯದ ಹೆಸರಿನಲ್ಲಿರತಕ್ಕದ್ದು. 3ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ಅಗತ್ಯಪಡಿಸಲಾದಂತೆ ಒದಗಿಸಿದ ವಿವರಗಳ ಆಧಾರದ ಮೇಲೆ ಸರ್ಕಾರವು 47ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಬೇಕೆಂದು ನ್ಯಾಸಕ್ಕೆ ನಿರ್ದೇಶನ ನೀಡಬಹುದು.

(2) ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಸ್ಥಾಪನೆಯ ತರುವಾಯ, ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, "ಗಾರ್ಡನ್ ಸಿಟಿ ವಿಶ್ವವಿದ್ಯಾಲಯ" ಎಂಬ ಹೆಸರಿನ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ರಾಜ್ಯದಲ್ಲಿ ಸ್ಥಾಪಿಸುವುದಕ್ಕೆ ಮಂಜೂರಾತಿಯನ್ನು ನೀಡಬಹುದು.

(3) ವಿಶ್ವವಿದ್ಯಾಲಯದ ಕೇಂದ್ರ ಕಾರ್ಯಸ್ಥಾನವು ಬೆಂಗಳೂರಿನಲ್ಲಿ ಇರತಕ್ಕದ್ದು. ವಿಶ್ವವಿದ್ಯಾಲಯವು ತನ್ನ ಕ್ಯಾಂಪಸ್ಸುಗಳನ್ನು ಅಥವಾ ಪ್ರಾದೇಶಿಕ ಕೇಂದ್ರಗಳನ್ನು, ಅಧ್ಯಯನ ಕೇಂದ್ರಗಳನ್ನು ಕರ್ನಾಟಕದ ಯಾವುದೇ ಭಾಗದಲ್ಲಿ ಹೊಂದಿರತಕ್ಕದ್ದು ಮತ್ತು ಆ ಬಗ್ಗೆ ರಾಜ್ಯ ಸರ್ಕಾರದ ಪೂರ್ವಾನುಮತಿಯನ್ನು ಪಡೆದುಕೊಳ್ಳುವುದಕ್ಕೊಳಪಟ್ಟು ಹಾಗೂ ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗನುಸಾರವಾಗಿ ಹೊಂದಿರತಕ್ಕದ್ದು.

(4) ಮೊದಲ ಕುಲಾಧಿಪತಿಯವರು, ಮೊದಲ ಕುಲಪತಿಯವರು, ಪ್ರಬಂಧಕ ಮಂಡಳಿಯ ಮೊದಲ ಸದಸ್ಯರುಗಳು, ವ್ಯವಸ್ಥಾಪನಾ ಮಂಡಳಿಯ ಹಾಗೂ ಶೈಕ್ಷಣಿಕ ಪರಿಷತ್ತಿನ ಮೊದಲ ಸದಸ್ಯರುಗಳು ಮತ್ತು ಇನ್ನು ಮುಂದೆ, ಅಂಥ ಅಧಿಕಾರಿಗಳು ಅಥವಾ ಸದಸ್ಯರುಗಳಾಗಬಹುದಾದಂಥ ಎಲ್ಲಾ ವ್ಯಕ್ತಿಗಳು, ಅಂಥ ಪದ ಅಥವಾ ಸದಸ್ಯತ್ವವನ್ನು ಹೊಂದಿರುವುದು ಮುಂದುವರೆಯುವವರೆಗೆ, ಒಂದು ನಿಗಮಿತ ನಿಕಾಯವನ್ನು ರಚಿಸತಕ್ಕದ್ದು. ಮತ್ತು ಅದು ವಿಶ್ವವಿದ್ಯಾಲಯದ ಹೆಸರಿನಲ್ಲಿ ದಾವೆ ಹೂಡಬಹುದು ಮತ್ತು ದಾವೆಗೊಳಗಾಗಬಹುದು.

(5) (2)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯವು ಸ್ಥಾಪನೆಗೆ ಮಂಜೂರಾತಿಯಾದ ಮೇಲೆ, ವಿಶ್ವವಿದ್ಯಾಲಯದ ಉದ್ದೇಶಕ್ಕಾಗಿ, ನ್ಯಾಸವು ಆರ್ಜಿಸಿದ, ಸೃಜಿಸಿದ, ಏರ್ಪಾಟು ಮಾಡಿಕೊಂಡ ಅಥವಾ ಕಟ್ಟಲ್ಪಟ್ಟ ಭೂಮಿ ಮತ್ತು ಇತರ ಸ್ಥಿರ ಮತ್ತು ಚರ ಸ್ವತ್ತು, ವಿಶ್ವವಿದ್ಯಾಲಯದಲ್ಲಿ ನಿಹಿತವಾಗಿರತಕ್ಕದ್ದು.

(6) ವಿಶ್ವವಿದ್ಯಾಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದ ಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂಥ ಧಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

(7) ವಿಶ್ವವಿದ್ಯಾಲಯದಲ್ಲಿನ ಭೂಮಿ, ಕಟ್ಟಡ ಮತ್ತು ಇತರ ಸ್ವತ್ತುಗಳನ್ನು ವಿಶ್ವವಿದ್ಯಾಲಯದ ಉದ್ದೇಶಗಳಿಗೆ ಆನುಷಂಗಿಕವಾಗಿರುವುದನ್ನು ಹೊರತುಪಡಿಸಿ ಇತರ ಯಾವುದೇ ಉದ್ದೇಶಕ್ಕಾಗಿ ಬಳಸತಕ್ಕದ್ದಲ್ಲ.

**5. ಅನುದಾನಗಳು ಮತ್ತು ಹಣಕಾಸು ನೆರವು.–** ವಿಶ್ವವಿದ್ಯಾಲಯವು ಸ್ವಂತ ಧನಮೂಲ ಉಳ್ಳದ್ದಾಗಿರತಕ್ಕದ್ದು ಮತ್ತು ರಾಜ್ಯದಿಂದ ಅಥವಾ ರಾಜ್ಯದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಇತರ ಸಂಸ್ಥೆ ಅಥವಾ ನಿಗಮದಿಂದ ಯಾವುದೇ ನಿರ್ವಹಣಾ ಸಹಾಯ ಅನುದಾನ ಅಥವಾ ಯಾವುದೇ ಹಣಕಾಸು ನೆರವನ್ನು ಹಕ್ಕಿನಿಂದ ಕೇಳತಕ್ಕದ್ದಲ್ಲ ಅಥವಾ ಅದನ್ನು ಪಡೆಯಲು ಹಕ್ಕನ್ನು ಹೊಂದಿರತಕ್ಕದ್ದಲ್ಲ:

ಪರಂತು, ರಾಜ್ಯವು,–

(ಎ) ಇತರ ರಾಜ್ಯ ಸರ್ಕಾರದ ಸಂಘಟನೆಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿರುವಂಥದ್ದೇ ಸಂಶೋಧನೆ, ಅಭಿವೃದ್ಧಿ ಮತ್ತಿತರ ಚಟುವಟಿಕೆಗಳಿಗಾಗಿ; ಅಥವಾ

(ಬಿ) ರಾಜ್ಯ ಸರ್ಕಾರದಿಂದ ನೆರವನ್ನು ಪಡೆಯುವ ಯಾವುದೇ ನಿರ್ದಿಷ್ಟ ಸಂಶೋಧನೆ ಅಥವಾ ಕಾರ್ಯಕ್ರಮಗಳಿಗಾಗಿ; ಮತ್ತು

(ಸಿ) ರಾಜ್ಯ ಕಾರ್ಯನೀತಿಯ ಬದಲಾವಣೆಗೆ ಒಳಪಟ್ಟು ಅಥವಾ ಅನ್ಯಥಾ ಇದೇ ಬಗೆಯ ವಿಶ್ವವಿದ್ಯಾಲಯಗಳಿಗೆ ಅವಕಾಶವನ್ನು ಕಲ್ಪಿಸುವುದಕ್ಕೆ ಅಥವಾ ಅವುಗಳ ಪ್ರಯೋಜನಕ್ಕಾಗಿ,

– ಅನುದಾನದ ಮೂಲಕ ಅಥವಾ ಅನ್ಯಥಾ ಹಣಕಾಸು ಬೆಂಬಲವನ್ನು ಒದಗಿಸಬಹುದು:

ಮತ್ತು ಪರಂತು, ವಿಶ್ವವಿದ್ಯಾಲಯವು, ಯಾವುದೇ ಇತರ ಮೂಲದಿಂದ ಯಾವುದೇ ಆರ್ಥಿಕ ನೆರವನ್ನು ಸ್ವೀಕರಿಸಬಹುದು.

**6. ಘಟಕ ಕಾಲೇಜು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಅಥವಾ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದಕ್ಕೆ ಅಧಿಕಾರ.**– ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಐದು ವರ್ಷಗಳನ್ನು ಪೂರ್ಣಗೊಳಿಸಿದ ನಂತರ, ವಿಶ್ವವಿದ್ಯಾಲಯ ಅನುದಾನ ಆಯೋಗದ ಮತ್ತು ಇತರ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ಗುಣಮಟ್ಟಗಳಿಗೆ ಒಳಪಟ್ಟು, ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ, ವಿಶ್ವವಿದ್ಯಾಲಯವು, ರಾಜ್ಯದಲ್ಲಿ ತನಗೆ ಸೂಕ್ತವೆನಿಸುವಂಥ ಸ್ಥಳಗಳಲ್ಲಿ ಘಟಕ ಕಾಲೇಜುಗಳು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದಿರಬಹುದು.

**7. ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು.**– ವಿಶ್ವವಿದ್ಯಾಲಯವು, ತನ್ನ ಭವಿಷ್ಯದ್‌ದೃಷ್ಟಿ ಮತ್ತು ಧ್ಯೇಯೋದ್ದೇಶಗಳನ್ನು ಸಾಧಿಸಲು ಈ ಮುಂದಿನಂತೆ ವಿವಿಧ ಬಗೆಯ ಕಾರ್ಯತಂತ್ರಗಳನ್ನು ಕೈಗೊಳ್ಳಬಹುದು:–

(i) ತಾಂತ್ರಿಕತೆ, ಆರೋಗ್ಯ, ವ್ಯವಸ್ಥಾಪನೆ, ಜೀವ ವಿಜ್ಞಾನಗಳು ಮತ್ತು ಸಂಬಂಧಿತ ವಲಯಗಳಲ್ಲಿ ಸ್ನಾತಕೋತ್ತರ, ಡಾಕ್ಟೊರಲ್ ಮತ್ತು ಪೋಸ್ಟ್ ಡಾಕ್ಟೊರಲ್ ಕೋರ್ಸುಗಳಿಗೆ ಮುಂದುವರಿಯುವ ಮತ್ತು ಅವುಗಳನ್ನು ಒಳಗೊಳ್ಳುವ ವಿಶ್ವವಿದ್ಯಾಲಯ ಶಿಕ್ಷಣದಲ್ಲಿ ಪ್ರಗತಿಯನ್ನು ಮತ್ತು ಅನ್ವೇಷಣೆಯನ್ನು ಬೆಂಬಲಿಸುವುದು, ಪ್ರೋತ್ಸಾಹಿಸುವುದು ಮತ್ತು ಕೈಗೊಳ್ಳುವುದು ಹಾಗೂ ಈ ಕ್ಷೇತ್ರಗಳಲ್ಲಿ ಸಲಹೆಯನ್ನೂ ಒಳಗೊಂಡಂತೆ ಸಂಶೋಧನೆ, ಪ್ರಗತಿ ಮತ್ತು ಪ್ರಸಾರಕ್ಕೆ ಅವಕಾಶವನ್ನು ಕಲ್ಪಿಸುವುದು;

(ii) ವಿದ್ಯಾರ್ಥಿಗಳಿಗೆ, ಬೋಧಕ ವೃಂದದ (ಫ್ಯಾಕಲ್ಟಿ) ಸದಸ್ಯರಿಗೆ ಮತ್ತು ಇತರರಿಗೆ ನಿರ್ದಿಷ್ಟ ಶೈಕ್ಷಣಿಕ ಮತ್ತು ಸಂಶೋಧನಾ ಕಾರ್ಯಕ್ರಮಗಳನ್ನು, ತರಬೇತಿ ಕಾರ್ಯಕ್ರಮಗಳನ್ನು ಮತ್ತು ವಿನಿಮಯ ಕಾರ್ಯಕ್ರಮಗಳನ್ನು ಪರಿಕಲ್ಪಿಸಲು, ವಿನ್ಯಾಸಗೊಳಿಸಲು, ಅಭಿವೃದ್ಧಿಪಡಿಸಲು ಇತರ ಯಾವುದೇ ವಿಶ್ವವಿದ್ಯಾಲಯಗಳು, ಸಂಶೋಧನಾ ಸಂಸ್ಥೆಗಳು, ಲಾಭರಹಿತ ಸಂಸ್ಥೆಗಳು, ಕೈಗಾರಿಕಾ ಸಂಸ್ಥೆಗಳು, ವೃತ್ತಿಪರ ಸಂಸ್ಥೆಗಳು ಅಥವಾ ಇತರ ಸಂಸ್ಥೆಗಳೊಂದಿಗೆ ಸಹಯೋಗವನ್ನು ಹೊಂದುವುದು;

(iii) ರಾಜ್ಯ ಸರ್ಕಾರದ ಪೂರ್ವ ಅನುಮೋದನೆಯೊಡನೆ, ಯಾವುದೇ ಸಂಸ್ಥೆಯೊಂದಿಗೆ ಸಹಯೋಗ ಹೊಂದಿ ಸಂಶೋಧನೆಯನ್ನು ಮತ್ತು ಹೊಸತನವನ್ನು ಬೆಳಕಿಗೆ ತರುವುದು;

(iv) ತಾನು ಸೂಕ್ತವೆಂದು ಭಾವಿಸಬಹುದಾದಂತೆ, ಕಲಿಕೆಯ ಅಂಥ ಶಾಖೆಗಳಲ್ಲಿ ಬೋಧನಾ ಮತ್ತು ಸಂಶೋಧನಾ ಸೌಲಭ್ಯಗಳನ್ನು ಒದಗಿಸಿ ಜ್ಞಾನ ಪ್ರಸಾರ ಮಾಡುವುದು ಮತ್ತು ಅದನ್ನು ಮುಂದುವರೆಸುವುದು ಹಾಗೂ ವಿಶೇಷವಾಗಿ ತಾಂತ್ರಿಕ, ಆರೋಗ್ಯ, ವ್ಯವಸ್ಥಾಪನೆ, ಜೀವ ವಿಜ್ಞಾನಗಳು ಮತ್ತು ಸಂಬಂಧಿತ ಕೋರ್ಸುಗಳಲ್ಲಿ ಸಮಗ್ರ ವ್ಯಾಸಂಗ ವಿಷಯಗಳಿಗಾಗಿ ವಿಶೇಷ ಉಪಬಂಧ ಕಲ್ಪಿಸುವುದು ಮತ್ತು ವಿಶ್ವವಿದ್ಯಾಲಯದಲ್ಲಿ ಅಂತರವಿದ್ಯಾವಿಷಯಗಳ ಅಧ್ಯಯನ ಮತ್ತು ಸಂಶೋಧನೆಗೆ ಉತ್ತೇಜನ ನೀಡುವುದಕ್ಕಾಗಿ ಸೂಕ್ತ ಕ್ರಮ ಕೈಗೊಳ್ಳುವುದು;

(v) ಇಂಜಿನಿಯರಿಂಗ್ ಪರಿಹಾರಗಳನ್ನೊದಗಿಸುವ ಭವಿಷ್ಯದ ಸಮರ್ಥವಾದ ತಾಂತ್ರಿಕತೆಗಳ ಸಂಶೋಧನೆಯೊಂದಿಗೆ ಮತ್ತು ತಾಂತ್ರಿಕ ವ್ಯವಹಾರ ಮತ್ತು ಬೆಳೆಯುತ್ತಿರುವ ತಾಂತ್ರಿಕತೆಗೆ ಬೆಂಬಲದೊಂದಿಗೆ ಉನ್ನತ ತಾಂತ್ರಿಕ ಮತ್ತು ವೃತ್ತಿಪರ ಕೈಗಾರಿಕೆಗಳ ಬೇಡಿಕೆಗಳನ್ನು ಈಡೇರಿಸುವುದು;

(vi) ಉನ್ನತ ಕಲಿಕೆಗೆ ಪ್ರವೇಶಾವಕಾಶಗಳನ್ನು ಮತ್ತು ನ್ಯಾಯಸಮ್ಮತತೆಗೆ ಉತ್ತೇಜನ ನೀಡುವ ದೃಷ್ಟಿಯಿಂದ, ಕಲಿಕೆಯ ವಿಧಾನಗಳು ಮತ್ತು ಸ್ಥಳಗಳು, ವ್ಯಾಸಂಗ ಕ್ರಮಗಳ ಸಂಯೋಜನೆ, ದಾಖಲಾತಿಗಾಗಿ ಅರ್ಹತೆ, ಪ್ರವೇಶದ ವಯಸ್ಸು, ಪರೀಕ್ಷೆಯನ್ನು ನಡೆಸುವುದು ಮತ್ತು ಕಾರ್ಯಕ್ರಮಗಳ ನಿರ್ವಹಣೆಗೆ ಸಂಬಂಧಿಸಿದಂತೆ ನಮ್ಯವಾದ (ಫ್ಲೆಕ್ಸಿಬಲ್) ಮತ್ತು ಮುಕ್ತವಾದ, ವಿಶ್ವವಿದ್ಯಾಲಯ ಮಟ್ಟದ ಶಿಕ್ಷಣದ ಅನ್ವೇಷಣಾ ಪದ್ಧತಿಯನ್ನು ಅಳವಡಿಸುವುದು ಹಾಗೂ ಜ್ಞಾನದ ಹೊಸ ಕ್ಷೇತ್ರಗಳಲ್ಲಿ ಉತ್ಕೃಷ್ಟತೆಗೆ ಪ್ರೋತ್ಸಾಹಿಸುವುದು, ಶೈಕ್ಷಣಿಕ ಮತ್ತು ಸಮನ್ವಯ ಕಲಿಕೆ, ಇವೆರೆಡಕ್ಕೂ ಸಮನಾದ ಪ್ರಾಮುಖ್ಯತೆಯನ್ನು ನೀಡುವುದು;

(vii) ಗುಣಮಟ್ಟದ ಶಿಕ್ಷಣಕ್ಕಾಗಿ ಕೊಡುಗೆಯನ್ನು ನೀಡಲು ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಸಂಪನ್ಮೂಲ ಕೇಂದ್ರಗಳನ್ನು ಅಭಿವೃದ್ಧಿಪಡಿಸುವುದು;

(viii) ಕರ್ನಾಟಕದಲ್ಲಿ ವಿವಿಧ ಸ್ಥಳಗಳಲ್ಲಿ ಕ್ಯಾಂಪಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳು ಮತ್ತು ಸಂಯೋಜಿತ ಕಾಲೇಜುಗಳನ್ನು ಸ್ಥಾಪಿಸುವುದು ಮತ್ತು ತಾಂತ್ರಿಕತೆ, ವೃತ್ತಿಪರತೆ, ಸಾಮಾನ್ಯ ಶಿಕ್ಷಣ ಮತ್ತು ಸಮಾಜ

ಮತ್ತು ಮಾನವ ಅಭಿವೃದ್ಧಿಯಲ್ಲಿ ಶೈಕ್ಷಣಿಕ ಬದಲಾವಣೆಗೆ ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಕೊಡುಗೆ ನೀಡುವುದು ಮತ್ತು ಜ್ಞಾನವನ್ನು ಅಭಿವೃದ್ಧಿಪಡಿಸುವುದು;

(ix) ಮೌಲ್ಯಮಾಪನದ ವಿವಿಧ ಆಧುನಿಕ ವಿಧಾನಗಳ ಮೂಲಕ ಮಾಡಿದ ಮೌಲ್ಯಮಾಪನಕ್ಕೆ ಅನುಸಾರವಾಗಿ ಶಿಕ್ಷಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದುದರ ಆಧಾರದ ಮೇಲೆ ನೀಡಲು ಪದವಿಗಳನ್ನು, ಡಿಪ್ಲೋಮೋಗಳನ್ನು, ಪ್ರಮಾಣಪತ್ರಗಳನ್ನು ಮತ್ತು ಯಶೋಪತ್ರ ಪ್ರದಾನದಂಥ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(x) ಉಪನ್ಯಾಸ ಮಾಲಿಕೆಗಳು, ವಿಚಾರ ಸಂಕಿರಣಗಳು, ಸಮ್ಮೇಳನಗಳು, ಕಾರ್ಯಾಂಗ ಶಿಕ್ಷಣ ಕಾರ್ಯಕ್ರಮಗಳು, ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳು, ಪ್ರಕಟಣೆಗಳು ಮತ್ತು ತರಬೇತಿ ಕಾರ್ಯಕ್ರಮಗಳು ಮತ್ತು ಕಾರ್ಯಸೂಚಿಗಳ ಮೂಲಕ ಜ್ಞಾನ ಪ್ರಸಾರ ಮಾಡುವುದು ಮತ್ತು ಶಿಕ್ಷಣ ಮತ್ತು ತತ್ಸಂಬಂಧಿತ ಅಭಿವೃದ್ಧಿ ಕ್ಷೇತ್ರಗಳ ವಿಷಯಗಳ ಬಗ್ಗೆ ಸಾರ್ವಜನಿಕ ಚರ್ಚೆಯನ್ನು ಏರ್ಪಡಿಸುವುದು;

(xi) ರಾಜ್ಯ ಸರ್ಕಾರದ ಪೂರ್ವ ಅನುಮತಿಯೊಂದಿಗೆ, ಉತ್ತಮ ಗುಣಮಟ್ಟದ ಇತರ ಯಾವುವೇ ವಿಶ್ವವಿದ್ಯಾಲಯಗಳೊಂದಿಗೆ ಸಹಭಾಗಿಗಳಾಗಿ ವಿಶ್ವವಿದ್ಯಾಲಯದ ಬೋಧಕ ವೃಂದ (ಫ್ಯಾಕಲ್ಟಿ) ಮತ್ತು ಸಂಶೋಧಕರ ಅಭಿವೃದ್ಧಿ ಮತ್ತು ತರಬೇತಿಗಾಗಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು;

(xii) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದಕ್ಕಾಗಿ ಮತ್ತು ಉತ್ತೇಜಿಸುವುದಕ್ಕಾಗಿ ಅವಶ್ಯಕವಾದ ಮತ್ತು ಯುಕ್ತವಾದ ಕ್ರಮಗಳನ್ನು ಕೈಗೊಳ್ಳುವುದು;

(xiii) ಭಾರತದಲ್ಲಿ ಶಿಕ್ಷಣ ಮತ್ತು ಇತರ ಅಭಿವೃದ್ಧಿ ವಲಯಗಳನ್ನು ವಿಸ್ತರಿಸುವುದಕ್ಕಾಗಿ ಸರ್ಕಾರವು ಅನುಮೋದಿಸಬಹುದಾದಂತೆ ಯಾವುವೇ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದು.

**8. ವಿಶ್ವವಿದ್ಯಾಲಯದ ಅಧಿಕಾರಗಳು.**– ವಿಶ್ವವಿದ್ಯಾಲಯವು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗೆ ಅನುಸಾರವಾಗಿ ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿರ್ಧರಿಸಬಹುದಾದಂತೆ ಕ್ಯಾಂಪಸ್ಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಕರ್ನಾಟಕದಲ್ಲಿ ಸ್ಥಾಪಿಸುವುದು ಮತ್ತು ನಿರ್ವಹಿಸುವುದು;

(ii) ವಿಶ್ವವಿದ್ಯಾಲಯದ ಉದ್ದೇಶವನ್ನು ಕಾರ್ಯರೂಪಕ್ಕೆ ತರುವಲ್ಲಿ ಅಗತ್ಯವಾಗಬಹುದಾದ ಅಥವಾ ಕಾರ್ಯಸಾಧ್ಯವಾಗಬಹುದಾದ ಎಲ್ಲಾ ಅಂಥ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು;

(iii) ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಮತ್ತು ಷರತ್ತುಗಳಿಗೊಳಪಟ್ಟು ಪದವಿಗಳು ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರದಾನಮಾಡುವುದು;

(iv) ಪರಿನಿಯಮಗಳನ್ವಯ ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿ ವೇತನಗಳು ಮತ್ತು ಬಹುಮಾನಗಳು, ಅವಾರ್ಡುಗಳು, ಪಾರಿತೋಷಕಗಳು ಇತ್ಯಾದಿಗಳನ್ನು ಸ್ಥಾಪಿಸುವುದು ಮತ್ತು ನೀಡುವುದು;

(v) ಪರಿನಿಯಮಗಳಲ್ಲಿ ಅಥವಾ ಸಂದರ್ಭಾನುಸಾರವಾಗಿ ನಿಯಮಗಳಲ್ಲಿ ನಿಗದಿಪಡಿಸಬಹುದಾದ ಅಂಥ ಶುಲ್ಕಗಳು, ಬಿಲ್ಲುಗಳು, ಖರೀದಿ ಪಟ್ಟಿಗಳನ್ನು ಕೇಳಿಪಡೆದುಕೊಳ್ಳುವುದು ಮತ್ತು ಸ್ವೀಕರಿಸುವುದು ಹಾಗೂ ಚಾರ್ಜುಗಳನ್ನು ವಸೂಲು ಮಾಡುವುದು;

(vi) ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಪಠ್ಯೇತರ ಚಟುವಟಿಕೆಗಳಿಗೆ ಅವಕಾಶಗಳನ್ನು ಕಲ್ಪಿಸುವುದು;

(vii) ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಕ್ಯಾಂಪಸುಗಳ, ಪ್ರಾದೇಶಿಕ ಕೇಂದ್ರಗಳ, ಅಧ್ಯಯನ ಕೇಂದ್ರಗಳ ಫ್ಯಾಕಲ್ಟಿ, ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವುದು;

(viii) ವಿಶ್ವವಿದ್ಯಾಲಯದ ಅಥವಾ ಒಂದು ಘಟಕ ಕಾಲೇಜಿನ ಅಥವಾ ಕ್ಯಾಂಪಸ್ಸಿನ, ಪ್ರಾದೇಶಿಕ ಕೇಂದ್ರದ, ಅಧ್ಯಯನ ಕೇಂದ್ರದ ಉದ್ದೇಶಕ್ಕಾಗಿ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದಿರುವ, ಯಾವುದೇ ರೀತಿಯ ಸ್ವಯಂ ದೇಣಿಗೆಗಳು ಮತ್ತು ಕೊಡುಗೆಗಳನ್ನು ಸ್ವೀಕರಿಸುವುದು ಮತ್ತು ನ್ಯಾಸ ಮತ್ತು ದತ್ತಿ ಸ್ವತ್ತುಗಳೂ ಸೇರಿದಂತೆ, ಯಾವುದೇ ಚರ ಅಥವಾ ಸ್ಥಿರ ಸ್ವತ್ತನ್ನು ಆರ್ಜಿಸುವುದು, ಹೊಂದಿರುವುದು, ನಿರ್ವಹಿಸುವುದು, ನಡೆಸುವುದು ಮತ್ತು ಹಸ್ತಾಂತರ ಮಾಡುವುದು;

(ix) ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸಿಕೊಂಡು ಬರುವುದು ಹಾಗೂ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ ವಿದ್ಯಾರ್ಥಿಗಳಿಗೆ ವಸತಿ ಸ್ಥಳಗಳಾಗಿ ಮಾನ್ಯತೆ ನೀಡುವುದು;

(x) ವಸತಿಯ ಮೇಲ್ವಿಚಾರಣೆ ಮಾಡುವುದು ಮತ್ತು ನಿಯಂತ್ರಣ ಮಾಡುವುದು ಹಾಗೂ ವಿದ್ಯಾರ್ಥಿಗಳು ಮತ್ತು ಎಲ್ಲಾ ಪ್ರವರ್ಗಗಳ ಸಿಬ್ಬಂದಿಗಳಲ್ಲಿ ಶಿಸ್ತು ನಿಯಂತ್ರಣ ಮಾಡುವುದು ಮತ್ತು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ನಡತೆ ಸಂಹಿತೆಯನ್ನು ರೂಪಿಸುವುದೂ ಒಳಗೊಂಡಂತೆ, ಅಂಥ ಸಿಬ್ಬಂದಿಗಳ ಸೇವಾಷರತ್ತುಗಳನ್ನು ನಿರೂಪಿಸುವುದು;

(xi) ಶೈಕ್ಷಣಿಕ, ಆಡಳಿತಾತ್ಮಕ ಮತ್ತು ಬೆಂಬಲ ಸಿಬ್ಬಂದಿಯ ಹುದ್ದೆಗಳನ್ನು ಮತ್ತು ಇತರ ಅವಶ್ಯ ಹುದ್ದೆಗಳನ್ನು ಸೃಜಿಸುವುದು;

(xii) ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ಉದ್ದೇಶಗಳಿಗಾಗಿ ಇತರ ವಿಶ್ವವಿದ್ಯಾಲಯಗಳೊಡನೆ ಸಹಕರಿಸುವುದು ಮತ್ತು ಸಹಯೋಗ ಹೊಂದುವುದು;

(xiii) ಶಿಕ್ಷಕರಿಗೆ, ಪಾಠಗಳನ್ನು ರಚಿಸುವವರಿಗೆ, ಮೌಲ್ಯಮಾಪಕರಿಗೆ ಮತ್ತಿತರ ಶೈಕ್ಷಣಿಕ ಸಿಬ್ಬಂದಿಗೆ ಪುನರ್ಮನನ ವ್ಯಾಸಂಗಕ್ರಮಗಳು, ಅಭಿಮುಖ ವ್ಯಾಸಂಗ ಕ್ರಮಗಳು, ಕಾರ್ಯಾಗಾರಗಳು, ವಿಚಾರಗೋಷ್ಠಿಗಳು ಮತ್ತಿತರ ಕಾರ್ಯಕ್ರಮಗಳನ್ನು ಏರ್ಪಡಿಸುವುದು ಮತ್ತು ನಡೆಸುವುದು;

(xiv) ಶೈಕ್ಷಣಿಕ ಪರಿಷತ್ತಿನ ಅನುಮೋದನೆಯೊಂದಿಗೆ ವಿಶ್ವವಿದ್ಯಾಲಯಕ್ಕೆ ಅಥವಾ ಘಟಕ ಕಾಲೇಜಿಗೆ, ಪ್ರಾದೇಶಿಕ ಕೇಂದ್ರಗಳಿಗೆ, ಅಧ್ಯಯನ ಕೇಂದ್ರಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮತ್ತು ಈ ಅಧಿನಿಯಮದಲ್ಲಿ ಕಲ್ಪಿಸಿದ ವ್ಯಾಪ್ತಿಗಿಂತ ಕಡಿಮೆಯಿಲ್ಲದಂತೆ ಕರ್ನಾಟಕದ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮಾನಕ ಗುಣಮಟ್ಟಗಳನ್ನು ನಿರ್ಧರಿಸುವುದು;

(xv) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಕಾರ್ಯರೂಪಕ್ಕೆ ತರಲು ಅವಶ್ಯವಾಗಬಹುದಾದಂಥ ಇತರ ಎಲ್ಲಾ ಕ್ರಮಗಳನ್ನು ಅಥವಾ ಕಾರ್ಯಗಳನ್ನು, ಅವು ಮೇಲೆ ಹೇಳಿದ ಅಧಿಕಾರಗಳಿಗೆ ಪ್ರಾಸಂಗಿಕವಾಗಿರಲಿ ಅಥವಾ ಇಲ್ಲದಿರಲಿ, ಕೈಗೊಳ್ಳುವುದು;

(xvi) ಪರೀಕ್ಷೆಗಳ ಆಧಾರದ ಮೇಲೆ ಅಥವಾ ಸರ್ಕಾರದಿಂದ ಅನುಮೋದಿತವಾದ ಇತರ ಯಾವುದೇ ಮೌಲ್ಯಮಾಪನ ವಿಧಾನದ ಆಧಾರದ ಮೇಲೆ ನೀಡಲು ಪದವಿಗಳು, ಡಿಪ್ಲೋಮಾಗಳು, ಪ್ರಮಾಣಪತ್ರಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಸ್ಥಾಪಿಸುವುದು;

(xvii) ಫಿಲ್ಮಗಳು, ಕ್ಯಾಸೆಟ್‌ಗಳು, ಧ್ವನಿಸುರುಳಿಗಳು, ದೃಶ್ಯಸುರುಳಿಗಳು, ಸಿ.ಡಿ., ವಿ.ಸಿ.ಡಿ. ಮತ್ತು ಇತರ ತಂತ್ರಾಂಶಗಳೂ ಹಾಗೂ ಇತರ ಸಂಬಂಧಿತ ವಿದ್ಯುನ್ಮಾನ ಮತ್ತು ಮುದ್ರಣ ಮಾಧ್ಯಮ ಸೇರಿದಂತೆ ಬೋಧಕ ಸಾಮಗ್ರಿಗಳನ್ನು ತಯಾರಿಸುವುದಕ್ಕಾಗಿ ಅವಕಾಶ ಕಲ್ಪಿಸುವುದು;

(xviii) ಪ್ರಬಂಧಕ ಮಂಡಳಿಯ ಅನುಮೋದನೆಯೊಡನೆ ವಿಶ್ವವಿದ್ಯಾಲಯದ ಉದ್ದೇಶಗಳಿಗಾಗಿ ವಿಶ್ವವಿದ್ಯಾಲಯದ ಸ್ವತ್ತುಗಳನ್ನು ಭದ್ರತೆಯಾಗಿ ನೀಡಿ ಅಥವಾ ನೀಡದೆ ಹಣವನ್ನು ಪಡೆಯುವುದು, ಸಂಗ್ರಹಿಸುವುದು, ಚಂದಾದಾರರಾಗುವುದು ಮತ್ತು ಸಾಲ ಪಡೆಯುವುದು;

(xix) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುದೇ ಇತರ ಶೈಕ್ಷಣಿಕ ಸಂಸ್ಥೆಗಳ ಆಡಳಿತವನ್ನು ವಶಪಡಿಸಿಕೊಳ್ಳುವುದು, ವಹಿಸಿಕೊಳ್ಳುವುದು ಮತ್ತು ನಡೆಸುವುದು;

(xx) ಕಾರ್ಯಕಾರಿ ಪರಿಷತ್ತು ಪೂರ್ವಾನುಮೋದನೆಯೊಂದಿಗೆ ಸ್ವತ್ತುಗಳನ್ನು ಆರ್ಜಿಸುವುದು;

(xxi) ವಿಶ್ವವಿದ್ಯಾಲಯದ ಮೇಲಿನ ಉದ್ದೇಶಗಳಿಗೆ ಸಂಬಂಧಿಸಿದ ಅಥವಾ ಪ್ರಾಸಂಗಿಕವಾದ ಯಾವುದೇ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು.

**9. ವಿಶ್ವವಿದ್ಯಾಲಯವು ಎಲ್ಲಾ ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲರಿಗೂ ಮುಕ್ತವಾಗಿರತಕ್ಕದ್ದು.–** ವಿಶ್ವವಿದ್ಯಾಲಯದ ಪ್ರವೇಶಗಳು ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲಾ ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು. ಎಲ್ಲಾ ಪ್ರವೇಶಗಳನ್ನು ಅರ್ಹತಾ ಪರೀಕ್ಷೆಗಳಲ್ಲಿನ ಅರ್ಹತೆಯ ಆಧಾರದ ಮೇಲೆ ಮಾಡತಕ್ಕದ್ದು:

ಪರಂತು, ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳ ಪ್ರವೇಶದಲ್ಲಿ ಶೇಕಡಾ ನಲವತ್ತರಷ್ಟನ್ನು ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ಮೀಸಲಿಡತಕ್ಕದ್ದು ಮತ್ತು ಪ್ರವೇಶಗಳನ್ನು ರಾಜ್ಯ ಸರ್ಕಾರವು ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡತಕ್ಕದ್ದು ಮತ್ತು ಸೀಟುಗಳನ್ನು ಅರ್ಹತೆ ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ರೂಪಿಸುವ ಮೀಸಲಾತಿ ನೀತಿಗೆ ಅನುಸಾರವಾಗಿ ಹಂಚಿಕೆ ಮಾಡತಕ್ಕದ್ದು:

ಮತ್ತು ಪರಂತು, ಯಾವುದೇ ಕೋರ್ಸಿನಲ್ಲಿ ಹತ್ತಕ್ಕಿಂತ ಕಡಿಮೆ ಸೀಟುಗಳು ಇರುವಲ್ಲಿ, ಸ್ನಾತಕೋತ್ತರದಂಥ ಕೋರ್ಸುಗಳನ್ನು ಒಟ್ಟಿಗೆ ಒಂದುಗೂಡಿಸುವ ಮೂಲಕ ಮೀಸಲಿಡತಕ್ಕದ್ದು ಮತ್ತು ಯಾವುದೇ ಕೋರ್ಸಿನಲ್ಲಿ ಮೂರು ಸೀಟುಗಳಿಗಿಂತ ಕಡಿಮೆ ಇರುವಲ್ಲಿ, ಅವುಗಳನ್ನು ಸರದಿ ಸುತ್ತಿನಲ್ಲಿ ಮೀಸಲಿಡತಕ್ಕದ್ದು.

**10. ರಾಷ್ಟ್ರೀಯ ಅಧಿಮಾನ್ಯತೆ.–** ವಿಶ್ವವಿದ್ಯಾಲಯವು ಪ್ರಾರಂಭವಾದ ತರುವಾಯ ಆದಷ್ಟು ಬೇಗನೆ ಸಂಬಂಧಪಟ್ಟ ಶಾಸನಾತ್ಮಕ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳಿಂದ ಅಧಿಮಾನ್ಯತೆಯನ್ನು ಕೋರತಕ್ಕದ್ದು ಮತ್ತು ಖಾಸಗಿ ವಿಶ್ವವಿದ್ಯಾಲಯಗಳು ನಡೆಸುವ ಎಲ್ಲಾ ವ್ಯಾಸಂಗ ಕ್ರಮಗಳು ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ವಿನಿಯಮಗಳಿಗೆ ಅನುಸಾರವಾಗಿ ಇರತಕ್ಕದ್ದು.

**11. ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು.–** ಪ್ರಾಯೋಜಕ ಸಂಸ್ಥೆಯು ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದಂತೆ ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಇವುಗಳಲ್ಲಿ ಪ್ರತಿಯೊಂದನ್ನು ಪ್ರಾಯೋಜಕ ಸಂಸ್ಥೆಯು ತನ್ನ ವಿವೇಚನಾನುಸಾರ ಚಲಾಯಿಸಬಹುದು, ಎಂದರೆ:–

(i) ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಪುನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(ii) ವಿಶ್ವವಿದ್ಯಾಲಯದ ಪ್ರಥಮ ಪ್ರಬಂಧಕ ಮಂಡಳಿಯನ್ನು ರಚಿಸುವುದು;

(iii) ಪ್ರಬಂಧಕ ಮಂಡಳಿಯ ಅಧ್ಯಕ್ಷರನ್ನು ನಾಮನಿರ್ದೇಶಿಸುವುದು;

(iv) ಪ್ರಬಂಧಕ ಮಂಡಳಿಯ ಸದಸ್ಯರಾಗಿ ಮೂರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(v) ವ್ಯವಸ್ಥಾಪನಾ ಮಂಡಳಿಯ ಸದಸ್ಯರಾಗಿ ಇಬ್ಬರು ವ್ಯಕ್ತಿಗಳನ್ನು ನಾಮ ನಿರ್ದೇಶಿಸುವುದು;

(vi) ವಿಶ್ವವಿದ್ಯಾಲಯದ ದತ್ತಿ ನಿಧಿಗೆ ದೇಣಿಗೆ ನೀಡಲು ನಿಧಿ ಮೂಲಗಳನ್ನು ನಿರ್ಧರಿಸುವುದು;

(vii) ವಿಶ್ವವಿದ್ಯಾಲಯದ ಹಣದ ವಿನಿಯೋಗ ಮತ್ತು ವೆಚ್ಚ ಮಾಡುವುದನ್ನು ನಿರ್ಧರಿಸುವುದು;

(viii) ಈ ಅಧಿನಿಯಮದಲ್ಲಿ ಉಪಬಂಧಿಸಿರುವ ವಿಧಾನದಲ್ಲಿ ಪ್ರಬಂಧಕ ಮಂಡಳಿಯ ಸಭೆಯಲ್ಲಿಯ ವಿವಾದಗಳನ್ನು ಬಗೆಹರಿಸುವುದು;

## ಅಧ್ಯಾಯ – III
## ವಿಶ್ವವಿದ್ಯಾಲಯದ ಅಧಿಕಾರಿಗಳು

**12. ವಿಶ್ವವಿದ್ಯಾಲಯದ ಅಧಿಕಾರಿಗಳು.–** ಈ ಮುಂದಿನವರು ವಿಶ್ವವಿದ್ಯಾಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:–

(i) ಸಂದರ್ಶಕರು;

(ii) ಸಹ-ಸಂದರ್ಶಕರು;

(iii) ಕುಲಾಧಿಪತಿಗಳು;

(iv) ಕುಲಪತಿಗಳು;

(v) ಸಹಕುಲಪತಿಗಳು;

(vi) ಕುಲಸಚಿವರು;

(vii) ಹಣಕಾಸು ಅಧಿಕಾರಿ; ಮತ್ತು

(viii) ಪರಿನಿಯಮಗಳ ಮೂಲಕ ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಘೋಷಿಸಬಹುದಾದಂಥ ಇತರ ಅಧಿಕಾರಿಗಳು.

**13. ಸಂದರ್ಶಕರು.–** (1) ಕರ್ನಾಟಕದ ಘನತೆವೆತ್ತ ರಾಜ್ಯಪಾಲರು ವಿಶ್ವವಿದ್ಯಾಲಯದ ಸಂದರ್ಶಕರಾಗಿರತಕ್ಕದ್ದು ಮತ್ತು ಸಂದರ್ಶಕರು ವಿಶ್ವವಿದ್ಯಾಲಯದ ಕಾರ್ಯನಿರ್ವಹಣೆಯ ಸುಧಾರಣೆಗಾಗಿ ಸಲಹೆಗಳನ್ನು ನೀಡಬಹುದು.

(2) ಸಂದರ್ಶಕರು, ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಸಂದರ್ಶಕರು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ವ್ಯವಹಾರಗಳಿಗೆ ಸಂಬಂಧಿಸಿದಂತೆ, ಯಾವುದೇ ಪತ್ರ ಅಥವಾ ಮಾಹಿತಿಯನ್ನು ತರಿಸಿಕೊಳ್ಳುವುದು.

(ii) ಸಂದರ್ಶಕರು, ಅವರು ಸ್ವೀಕರಿಸಿದ ಮಾಹಿತಿಯ ಆಧಾರದ ಮೇಲೆ ವಿಶ್ವವಿದ್ಯಾಲಯಗಳ ಯಾವುದೇ ಪ್ರಾಧಿಕಾರವು ಮಾಡಿದ ಯಾವುದೇ ಆದೇಶ, ನಡೆಸಿದ ವ್ಯವಹರಣೆಗಳು ಅಥವಾ ಕೈಗೊಂಡ ತೀರ್ಮಾನಗಳು, ಈ ಅಧಿನಿಯಮ, ವಿನಿಯಮಗಳು ಅಥವಾ ನಿಯಮಗಳಿಗೆ ಪೂರಕವಾಗಿಲ್ಲವೆಂದು ಮನಗಂಡರೆ ಅವರು ವಿಶ್ವವಿದ್ಯಾಲಯದ ಹಿತಾಸಕ್ತಿಯಿಂದ ತಾವು ಸೂಕ್ತವೆಂದು ಭಾವಿಸಬಹುದಾದಂಥ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಹಾಗೆ ಹೊರಡಿಸಿದ ನಿರ್ದೇಶನಗಳನ್ನು ಸಂಬಂಧಪಟ್ಟವರೆಲ್ಲರೂ ಪಾಲಿಸತಕ್ಕದ್ದು.

**14. ಸಹ-ಸಂದರ್ಶಕರು.–** (1) ಕರ್ನಾಟಕ ಸರ್ಕಾರದ ಮಾನ್ಯ ಉನ್ನತ ಶಿಕ್ಷಣ ಸಚಿವರು ವಿಶ್ವವಿದ್ಯಾಲಯದ ಸಹ-ಸಂದರ್ಶಕರಾಗಿರತಕ್ಕದ್ದು.

(2) ಸಂದರ್ಶಕರ ಅನುಪಸ್ಥಿತಿಯಲ್ಲಿ ಸಹ-ಸಂದರ್ಶಕರು ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**15. ಕುಲಾಧಿಪತಿಗಳು.–** (1) ಕುಲಾಧಿಪತಿಯವರನ್ನು ಪ್ರಾಯೋಜಕ ಸಂಸ್ಥೆಯು ನೇಮಿಸತಕ್ಕದ್ದು.

(2) ಪ್ರಾಯೋಜಕ ಸಂಸ್ಥೆಯ ಪ್ರಸ್ತುತ ಅಧ್ಯಕ್ಷರು ಮೊದಲನೇ ಕುಲಾಧಿಪತಿಗಳಾಗಿರತಕ್ಕದ್ದು, ಅವರು ತಮ್ಮ ಜೀವನಪರ್ಯಂತ ಅಥವಾ ಅವರು ತಮ್ಮ ಪದವನ್ನು ಬಿಟ್ಟುಕೊಡುವವರೆಗೆ ಕುಲಾಧಿಪತಿಗಳಾಗಿ ಪದಧಾರಣ ಮಾಡಿರತಕ್ಕದ್ದು.

(3) ತದನಂತರದ ಕುಲಾಧಿಪತಿಗಳು, ಅಂಥ ನೇಮಕಾತಿಯನ್ನು ಪರಿಗಣಿಸುವ ಸಂದರ್ಭದಲ್ಲಿ ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ, ಪ್ರಾಯೋಜಕ ಸಂಸ್ಥೆಯ ನ್ಯಾಸಧಾರಿಯಾಗಿರತಕ್ಕದ್ದು ಅಥವಾ ಶಿಕ್ಷಣ, ವಿಜ್ಞಾನ, ಸಂಸ್ಕೃತಿ ಅಥವಾ ಸಾರ್ವಜನಿಕ ಜೀವನ ಕ್ಷೇತ್ರಗಳಲ್ಲಿ ರಾಷ್ಟ್ರೀಯ ಮಟ್ಟದ ಛಾಪನ್ನು ಪಡೆದಿರುವ ಅಂಥ ಇತರ ವ್ಯಕ್ತಿಯಾಗಿರತಕ್ಕದ್ದು.

(4) ಹಾಗೆ ನೇಮಕಗೊಂಡ ತದನಂತರದ ಕುಲಾಧಿಪತಿಗಳು ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ಪದಧಾರಣ ಮಾಡತಕ್ಕದ್ದು.

(5) ಕುಲಾಧಿಪತಿಗಳು ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳ ಅಡಿಯಲ್ಲಿ ಅವರಿಗೆ ಪ್ರದಾನ ಮಾಡಬಹುದಾದಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು, ಅವುಗಳಲ್ಲಿ ಈ ಮುಂದಿನ ಅಧಿಕಾರಗಳು ಒಳಗೊಂಡಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುವುದು;

(ii) ಸಂದರ್ಶಕರ ಮತ್ತು ಸಹ-ಸಂದರ್ಶಕರಿಬ್ಬರ ಗೈರುಹಾಜರಿಯಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಘಟಿಕೋತ್ಸವಗಳಲ್ಲಿ ಅಧ್ಯಕ್ಷತೆಯನ್ನು ವಹಿಸುವುದು;

(iii) ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವುದು;

(iv) ಈ ಅಧಿನಿಯಮ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಅನುಸಾರವಾಗಿ ಕುಲಪತಿಗಳನ್ನು ನೇಮಿಸುವುದು ಅಥವಾ ಪುನರ್ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(v) ಈ ಅಧಿನಿಯಮದ 16ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ನಾಮನಿರ್ದೇಶಕ ಸಮಿತಿಯ ಸದಸ್ಯರಾಗಿ ಒಬ್ಬ ವ್ಯಕ್ತಿಯನ್ನು ನಾಮನಿರ್ದೇಶನ ಮಾಡುವುದು;

(vi) ಸಹಕುಲಪತಿಗಳು, ಡೀನ್, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿಗಳ ನೇಮಕಾತಿಯನ್ನು ಪೂರ್ವಾನುಮೋದಿಸುವುದು;

(vii) ಪ್ರಬಂಧಕ ಮಂಡಳಿಯ ಸದಸ್ಯರನ್ನಾಗಿ ಇಬ್ಬರು ಶಿಕ್ಷಣ ತಜ್ಞರನ್ನು ನಾಮನಿರ್ದೇಶಿಸುವುದು;

(viii) ಮೊದಲ ಸಹಕುಲಪತಿಗಳು ಮತ್ತು ಹಣಕಾಸು ಅಧಿಕಾರಿಗಳನ್ನು ನೇಮಿಸುವುದು;

(ix) ಮೊದಲ ವ್ಯವಸ್ಥಾಪನಾ ಮಂಡಳಿ, ಹಣಕಾಸು ಸಮಿತಿ, ಸಂಶೋಧನಾ ಪರಿಷತ್ತು ಹಾಗೂ ಶೈಕ್ಷಣಿಕ ಪರಿಷತ್ತುಗಳನ್ನು ರಚಿಸುವುದು;

(x) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ ಕಾರ್ಯಸೂಚಿ ವಿಷಯಗಳನ್ನು ಪೂರ್ವಾನುಮೋದಿಸುವುದು;

(xi) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ (ಪ್ರಬಂಧಕ ಮಂಡಳಿಯ ಸಭೆಯಲ್ಲಿ ಉಂಟಾದ ವಿವಾದಗಳನ್ನು ಹೊರತುಪಡಿಸಿ) ವಿವಾದಗಳನ್ನು ಪರಿಹರಿಸುವುದು.

(6) ಪದಾಧಿಕಾರಿ ಅಥವಾ ಸಂಸ್ಥೆ ಮತ್ತು ವಿಶ್ವವಿದ್ಯಾಲಯದ ಯಾವುದೇ ಇತರ ಪದಾಧಿಕಾರಿ ಅಥವಾ ಸಂಸ್ಥೆಯ ನಡುವೆ ವಿವಾದಗಳು ಉಂಟಾದಲ್ಲಿ, ಆ ವಿವಾದವನ್ನು ಕುಲಾಧಿಪತಿಯವರ ಪರ್ಯಾಲೋಚನೆಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿವಾದದ ಸಂದರ್ಭದಲ್ಲಿ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**16. ಕುಲಪತಿಗಳು.-** (1) (2)ನೇ ಉಪಪ್ರಕರಣದ ಉಪಬಂಧಗಳಿಗೆ ಅನುಸಾರವಾಗಿ ನಾಮನಿರ್ದೇಶಕ ಸಮಿತಿಯು ಶಿಫಾರಸ್ಸು ಮಾಡಿದ ಮೂರು ವ್ಯಕ್ತಿಗಳ ಪೈಕಿಯಿಂದ ಒಬ್ಬರನ್ನು ಮೂರು ವರ್ಷಗಳ ಅವಧಿಗಾಗಿ ಕುಲಪತಿಗಳನ್ನಾಗಿ, ಪರಿನಿಯಮಗಳಲ್ಲಿ ನಿಯಮಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರು ನೇಮಿಸತಕ್ಕದ್ದು. ಮೂರು ವರ್ಷಗಳ ಅವಧಿಯು ಮುಗಿದ ತರುವಾಯ, ಇದನ್ನು ಮೂರು ವರ್ಷಗಳ ಮತ್ತೊಂದು ಅವಧಿಗೆ ನವೀಕರಿಸಬಹುದು:

ಪರಂತು, ಕುಲಪತಿಯವರು, ತಮ್ಮ ಅವಧಿ ಮುಗಿದ ನಂತರವೂ ಹೊಸ ಕುಲಪತಿಯವರು ಸೇರಿಕೊಳ್ಳುವವರೆಗೆ ಪದದಲ್ಲಿ ಮುಂದುವರೆಯತಕ್ಕದ್ದು. ಆದಾಗ್ಯೂ ಈ ಅವಧಿಯು ಯಾವುದೇ ಸಂದರ್ಭದಲ್ಲಿ ಒಂದು ವರ್ಷವನ್ನು ಮೀರತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಹೇಳಿರುವ ನಾಮನಿರ್ದೇಶಕ ಸಮಿತಿಯಲ್ಲಿ ಈ ಮುಂದಿನ ವ್ಯಕ್ತಿಗಳು ಇರತಕ್ಕದ್ದು, ಎಂದರೆ:-

(i) ಕುಲಾಧಿಪತಿಯವರು ನಾಮನಿರ್ದೇಶಿಸಿದ ಒಬ್ಬ ವ್ಯಕ್ತಿ;

(ii) ಪ್ರಬಂಧಕ ಮಂಡಳಿಯ ಇಬ್ಬರು ನಾಮ ನಿರ್ದೇಶಿತರು, ಇವರಲ್ಲಿ ಒಬ್ಬರನ್ನು ಪ್ರಬಂಧಕ ಮಂಡಳಿಯು ಸಮಿತಿಯ ಸಂಚಾಲಕರೆಂದು ನಾಮನಿರ್ದೇಶಿಸತಕ್ಕದ್ದು.

(3) ನಾಮನಿರ್ದೇಶನ ಸಮಿತಿಯು, ಅರ್ಹತೆಯ ಆಧಾರದ ಮೇಲೆ ಕುಲಪತಿಯ ಹುದ್ದೆಗೆ ಸೂಕ್ತವಾದ ಮೂರು ವ್ಯಕ್ತಿಗಳ ಹೆಸರನ್ನು ಶಿಫಾರಸ್ಸು ಮಾಡತಕ್ಕದ್ದು ಮತ್ತು ಅದನ್ನು ಪ್ರತಿಯೊಬ್ಬ ವ್ಯಕ್ತಿಯ ವಿದ್ಯಾರ್ಹತೆ ಮತ್ತಿತರ ವಿಶಿಷ್ಟ ಪ್ರಶಸ್ತಿಗಳನ್ನು ತಿಳಿಸುವ ಒಂದು ಸಂಕ್ಷಿಪ್ತ ವರದಿಯೊಂದಿಗೆ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು.

(4) ಕುಲಪತಿಯವರು ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಾಹಕ ಮತ್ತು ಶೈಕ್ಷಣಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣವನ್ನು ಚಲಾಯಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯದ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೊಳಿಸತಕ್ಕದ್ದು:

ಪರಂತು, ಶಿಕ್ಷಕರ ನೇಮಕಾತಿಯನ್ನು ಹೊರತುಪಡಿಸಿ ಕೂಡಲೇ ಕ್ರಮವನ್ನು ಕೈಗೊಳ್ಳಬೇಕಾದ ತುರ್ತು ಸ್ವರೂಪದ ಯಾವುದೇ ಇತರ ವಿಷಯಗಳಲ್ಲಿ ಮತ್ತು ಅದನ್ನು ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ವಿಶ್ವವಿದ್ಯಾಲಯವು ಇದಕ್ಕಾಗಿ ಅಧಿಕೃತಗೊಳಿಸಿದ್ದ ಯಾವೊಬ್ಬ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ಇತರ ಸಂಸ್ಥೆಯು ಕೂಡಲೇ ಕ್ರಮಕೈಗೊಳ್ಳುವುದು

ಸಾಧ್ಯವಿರದಿರುವಾಗ ಕುಲಪತಿಯವರು ತಾನು ಸೂಕ್ತವೆಂದು ಭಾವಿಸಬಹುದಾದಂತಹ ಕ್ರಮವನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆದು ಕೈಗೊಳ್ಳತಕ್ಕದ್ದು.

(5) ಕುಲಪತಿಯವರು ಪರಿನಿಯಮಗಳು ಅಥವಾ ನಿಯಮಗಳಲ್ಲಿ ಹೇಳಲಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು:

ಪರಂತು, ಕುಲಪತಿಗಳ ಅಭಿಪ್ರಾಯದಲ್ಲಿ, ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಯಾವುದೇ ನಿರ್ಣಯವು, ಈ ಅಧಿನಿಯಮ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳು, ವಿನಿಯಮಗಳು ಅಥವಾ ನಿಯಮಗಳ ಮೂಲಕ ಪ್ರದತ್ತವಾದ ಅಧಿಕಾರದ ಹೊರಗಿದ್ದರೆ ಅಥವಾ ವಿಶ್ವವಿದ್ಯಾಲಯದ ಹಿತಾಸಕ್ತಿಗೆ ಪ್ರತಿಕೂಲವಾಗಬಹುದಾಗಿದ್ದರೆ, ಅದರ ನಿರ್ಣಯದ ದಿನಾಂಕದಿಂದ ಹದಿನೈದು ದಿನಗಳ ಒಳಗೆ ತನ್ನ ನಿರ್ಣಯವನ್ನು ಪರಿಷ್ಕರಿಸಲು ಸಂಬಂಧಪಟ್ಟ ಪ್ರಾಧಿಕಾರವನ್ನು ಆತನು ಕೋರತಕ್ಕದ್ದು ಮತ್ತು ಪ್ರಾಧಿಕಾರವು ಅಂಥ ನಿರ್ಣಯವನ್ನು ಸಂಪೂರ್ಣವಾಗಿ ಅಥವಾ ಭಾಗಶ:ವಾಗಿ ಪರಿಷ್ಕರಿಸಲು ನಿರಾಕರಿಸಿದ ಸಂದರ್ಭದಲ್ಲಿ ಅಥವಾ ಹದಿನೈದು ದಿನಗಳೊಳಗೆ ಯಾವುದೇ ನಿರ್ಣಯವನ್ನು ತೆಗೆದುಕೊಳ್ಳಲು ವಿಫಲವಾದಲ್ಲಿ, ನಂತರ ಅಂಥ ವಿಷಯವನ್ನು ಕುಲಾಧಿಪತಿಗಳಿಗೆ ಕಳುಹಿಸತಕ್ಕದ್ದು ಮತ್ತು ಈ ಬಗ್ಗೆ ಇವರ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

(6) ಕುಲಪತಿಯವರ ಸೇವೆಗಳನ್ನು, ಪ್ರಬಂಧಕ ಮಂಡಳಿಯ ಅನುಮೋದನೆಯೊಂದಿಗೆ ಮತ್ತು ಸಹಜ ನ್ಯಾಯದ ತತ್ವಗಳನ್ನು ಅನುಸರಿಸಿದ ನಂತರ ಹಾಗೂ ಶಿಸ್ತಿನ ಆಧಾರದ ಮೇಲೆ ಅಂತ್ಯಗೊಳಿಸುವ ಸಂದರ್ಭವೂ ಸೇರಿದಂತೆ, ಪ್ರಕರಣದ ಬಗ್ಗೆ ಕುಲಪತಿಯು ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡಿದ ತರುವಾಯ, ಕುಲಾಧಿಪತಿಯವರು ಅಂತ್ಯಗೊಳಿಸಬಹುದು.

(7) ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಸಂದರ್ಶಕರು, ಸಹ-ಸಂದರ್ಶಕರು ಮತ್ತು ಕುಲಾಧಿಪತಿಯವರು ಇವರುಗಳ ಗೈರು ಹಾಜರಿಯ ಸಂದರ್ಭದಲ್ಲಿ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**17. ಸಹಕುಲಪತಿಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಮೂರು ಜನರನ್ನು ಮೀರದಂತೆ ಸಹಕುಲಪತಿಗಳನ್ನು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**18. ವ್ಯಾಸಂಗ ವಿಭಾಗಗಳ ಡೀನ್‌ಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಪರಿನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವ್ಯಾಸಂಗ ವಿಭಾಗಗಳ ಡೀನ್‌ಗಳನ್ನು ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**19. ಕುಲಸಚಿವರು.–** (1) ಕುಲಾಧಿಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಸಚಿವರನ್ನು ನೇಮಕ ಮಾಡತಕ್ಕದ್ದು.

(2) ಪರಿನಿಯಮಗಳಲ್ಲಿ ಪರಿಭಾಷಿಸಿರುವಂಥ ಎಲ್ಲಾ ಕರಾರುಗಳನ್ನು ವಿಶ್ವವಿದ್ಯಾಲಯದ ಪರವಾಗಿ ಕುಲಸಚಿವರು ಮಾಡಿಕೊಳ್ಳತಕ್ಕದ್ದು ಮತ್ತು ಅದಕ್ಕೆ ಸಹಿ ಹಾಕತಕ್ಕದ್ದು.

(3) ಕುಲಸಚಿವರು ವಿಶ್ವವಿದ್ಯಾಲಯದ ಪರವಾಗಿ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಪರಿನಿಯಮಗಳಿಂದ ಪ್ರದತ್ತಗೊಳಿಸಬಹುದಾದಂಥ ಅಥವಾ ಕುಲಾಧಿಪತಿಯವರು ಮತ್ತು ಕುಲಪತಿಯವರು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು ವಿಶ್ವವಿದ್ಯಾಲಯದ ದಾಖಲೆಗಳು ಮತ್ತು ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು, ಕುಲಪತಿಯವರು ಅಥವಾ ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಅಂಥ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿತಕ್ಕದ್ದು.

**20. ಹಣಕಾಸು ಅಧಿಕಾರಿ.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು, ಪರಿನಿಯಮಗಳ ಮೂಲಕ ಪ್ರದತ್ತಗೊಳಿಸಬಹುದಾದ ಅಂಥ ವಿಧಾನದಲ್ಲಿ ಹಣಕಾಸು ಅಧಿಕಾರಿಯನ್ನು ನೇಮಕ ಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**21. ಇತರ ಅಧಿಕಾರಿಗಳು.–** ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ ನೇಮಕಾತಿಯ ವಿಧಾನ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಕರ್ತವ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ – IV

## ವಿಶ್ವವಿದ್ಯಾಲಯದ ಪ್ರಾಧಿಕಾರಗಳು

**22. ವಿಶ್ವವಿದ್ಯಾಲಯದ ಪ್ರಾಧಿಕಾರಗಳು.–** ಈ ಮುಂದಿನವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:–

(i) ಪ್ರಬಂಧಕ ಮಂಡಳಿ;

(ii) ವ್ಯವಸ್ಥಾಪನಾ ಮಂಡಳಿ;

(iii) ಶೈಕ್ಷಣಿಕ ಪರಿಷತ್ತು;

(iv) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು;

(v) ಹಣಕಾಸು ಸಮಿತಿ; ಮತ್ತು

(vi) ವಿಶ್ವವಿದ್ಯಾಲಯದ ಪ್ರಾಧಿಕಾರಗಳೆಂದು ಪರಿನಿಯಮಗಳ ಮೂಲಕ ಘೋಷಿಸಬಹುದಾದ ಅಂಥ ಇತರ ಪ್ರಾಧಿಕಾರಗಳು.

**23. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು.–** (1) ಪ್ರಬಂಧಕ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು – ಅಧ್ಯಕ್ಷರು;

(ii) ಕುಲಪತಿಯವರು – ಸದಸ್ಯರು;

(iii) ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(iv) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(v) ರಾಜ್ಯ ಸರ್ಕಾರವು ನಾಮ ನಿರ್ದೇಶನ ಮಾಡಿದ ಆಡಳಿತವನ್ನು ಒಳಗೊಂಡಂತೆ ವ್ಯವಸ್ಥಾಪನೆ, ಹಣಕಾಸು ಅಥವಾ ಯಾವುದೇ ಇತರ ವಿಶೇಷ ಕ್ಷೇತ್ರದಲ್ಲಿನ ಒಬ್ಬರು ತಜ್ಞರು;

(vi) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಇಬ್ಬರು ವ್ಯಕ್ತಿಗಳು ಅವರ ಪೈಕಿ ಒಬ್ಬರು ಮಹಿಳೆಯಾಗಿರತಕ್ಕದ್ದು;

(vii) ಸಹ ಕುಲಪತಿಯವರು ಮತದಾನದ ಹಕ್ಕಿಲ್ಲದ ಸದಸ್ಯರಾಗಿರತಕ್ಕದ್ದು;

(viii) ವಿಶ್ವವಿದ್ಯಾಲಯ ಅನುದಾನ ಆಯೋಗದ ನಾಮನಿರ್ದೇಶಿತ ಒಬ್ಬ ಸುಪ್ರಸಿದ್ಧ ಶಿಕ್ಷಣ ತಜ್ಞರು.

(2) ಕುಲಸಚಿವರು ಪ್ರಬಂಧಕ ಮಂಡಳಿಯ ಮತ ದಾನದ ಹಕ್ಕಿರದ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ಪ್ರಬಂಧಕ ಮಂಡಳಿಯ ಸದಸ್ಯರ ಪದಾವಧಿ, ಸರ್ಕಾರದಿಂದ ನಾಮನಿರ್ದೇಶಿತರಾದ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ನೇಮಕಾತಿ, ನವೀಕರಣ ಮತ್ತು ತೆಗೆದುಹಾಕುವುದು ಮುಂತಾದವುಗಳು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಾಧಿಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರ ಗೈರುಹಾಜರಿಯಲ್ಲಿ ಕುಲಾಧಿಪತಿಯವರಿಂದ ನಾಮನಿರ್ದೇಶಿತರಾದ ಯಾರಾದರೂ ಒಬ್ಬರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು. ಅಂಥ ಸಭೆಯ ಅಧ್ಯಕ್ಷತೆಯನ್ನು ವಹಿಸುವುದಕ್ಕೆ ಕುಲಾಧಿಪತಿಯವರು ಯಾವೊಬ್ಬ ವ್ಯಕ್ತಿಯನ್ನೂ ನಾಮನಿರ್ದೇಶನ ಮಾಡಿರದಿದ್ದಲ್ಲಿ, ಸಭೆಯಲ್ಲಿ ಹಾಜರಿರುವ ಸದಸ್ಯರು ಸರಳ ಬಹುಮತದ ಮೂಲಕ ಅವರುಗಳ ಪೈಕಿಯಿಂದಲೇ ಆ ಸಭೆಗೆ ಮಾತ್ರವೇ ಅಧ್ಯಕ್ಷನನ್ನು ಚುನಾಯಿಸತಕ್ಕದ್ದು.

(5) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಿಗೆ, ಅಂಥ ಸಭೆಯಲ್ಲಿ ಹಾಜರಾಗುವ ಮತ್ತು ಮತದಾನ ನೀಡುವ ಮೂರು ಜನ ಸದಸ್ಯರು ಗಣಪೂರ್ತಿ (ಕೋರಂ) ಆಗಿರತಕ್ಕದ್ದು:

ಪರಂತು, ಪ್ರಬಂಧಕ ಮಂಡಳಿಯ ಯಾವುದೇ ಸಭೆಯ ಕೋರಂ ಪೂರ್ಣವಾಗಬೇಕಾದರೆ ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಿರುವುದು ಮತ್ತು ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ನಾಮನಿರ್ದೇಶಿತರು ಹಾಜರಾಗದೇ ಇದ್ದಾಗ ಕುಲಪತಿಯವರು ಹಾಜರಿರುವುದು ಯಾವಾಗಲೂ ಅವಶ್ಯವಾಗಿರತಕ್ಕದ್ದು.

(6) ಪ್ರಬಂಧಕ ಮಂಡಳಿಯು ವಿಶ್ವವಿದ್ಯಾಲಯದ ಪ್ರಧಾನ ಪ್ರಬಂಧಕ ಸಂಸ್ಥೆಯಾಗಿರತಕ್ಕದ್ದು ಮತ್ತು ಅದು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಕಗೊಳಿಸುವುದು;

(ii) ವಿಶ್ವವಿದ್ಯಾಲಯವು ಅನುಸರಿಸಬೇಕಾದ ಕಾರ್ಯನೀತಿಗಳನ್ನು ರಚಿಸುವುದು;

(iii) ಈ ಅಧಿನಿಯಮದ ಅಥವಾ ಪರಿನಿಯಮಗಳ ಅಥವಾ ನಿಯಮಗಳ ಉಪಬಂಧಗಳಿಗೆ ಅನುಗುಣವಾಗಿ ಇರದ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ತೀರ್ಮಾನಗಳನ್ನು ಪುನರೀಕ್ಷಿಸುವುದು;

(iv) ವಿಶ್ವವಿದ್ಯಾಲಯದ ಆಯವ್ಯಯ ಮತ್ತು ವಾರ್ಷಿಕ ವರದಿಗಳನ್ನು ಅನುಮೋದಿಸುವುದು;

(v) ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸುವುದು ಅಥವಾ ಈಗಾಗಲೇ ಇರುವ ಪರಿನಿಯಮಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವುದು ಅಥವಾ ನಿರಸನಗೊಳಿಸುವುದು;

(vi) ವಿಶ್ವವಿದ್ಯಾಲಯವನ್ನು ಸ್ವಯಂಸಮಾಪನಗೊಳಿಸುವ ನಿರ್ಧಾರವನ್ನು ತೆಗೆದುಕೊಳ್ಳುವುದು;

(vii) ಸರ್ಕಾರಕ್ಕೆ ಸಲ್ಲಿಸುವ ಪ್ರಸ್ತಾವಗಳನ್ನು ಅನುಮೋದಿಸುವುದು;

(viii) ಶುಲ್ಕ ನಿಯಂತ್ರಣ ಸಮಿತಿಗೆ ಮೂವರು ಸದಸ್ಯರನ್ನು ನಾಮನಿರ್ದೇಶನ ಮಾಡುವುದು;

(ix) ವಿಶ್ವವಿದ್ಯಾಲಯದ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕೆ ಅಪೇಕ್ಷಣೀಯವೆಂದು ಕಂಡುಬರುವಂಥ ತೀರ್ಮಾನಗಳನ್ನು ಮತ್ತು ಕ್ರಮಗಳನ್ನು ಕೈಗೊಳ್ಳುವುದು.

(7) ಪ್ರಬಂಧಕ ಮಂಡಳಿಯು ಒಂದು ವರ್ಷದಲ್ಲಿ ಕನಿಷ್ಠ ಮೂರು ಸಲ ಸಭೆ ಸೇರತಕ್ಕದ್ದು.

(8) ಪ್ರಬಂಧಕ ಮಂಡಳಿಯು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಸಮಯ ಮತ್ತು ಸ್ಥಳದಲ್ಲಿ ಸಭೆ ಸೇರತಕ್ಕದ್ದು.

**24. ವ್ಯವಸ್ಥಾಪನಾ ಮಂಡಳಿ.–** (1) ವ್ಯವಸ್ಥಾಪನಾ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಗಳು;

(ii) ಸಹಕುಲಪತಿಗಳು;

(iii) ಕುಲಸಚಿವರು;

(iv) ಪ್ರಾಯೋಜಕ ಸಂಸ್ಥೆಯ ಇಬ್ಬರು ನಾಮನಿರ್ದೇಶಿತರು;

(v) ಕುಲಪತಿಗಳು ನಾಮನಿರ್ದೇಶಿಸಬಹುದಾದ ವಿದ್ಯಾಲಯಗಳ ಇಬ್ಬರು ಡೀನ್‌ಗಳು;

(2) ಕುಲಪತಿಯವರು ವ್ಯವಸ್ಥಾಪನಾ ಮಂಡಳಿಯ ಅಧ್ಯಕ್ಷರಾಗಿರತಕ್ಕದ್ದು ಮತ್ತು ಕುಲಸಚಿವರು ವ್ಯವಸ್ಥಾಪನಾ ಮಂಡಳಿಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ವ್ಯವಸ್ಥಾಪನಾ ಮಂಡಳಿಯು ವಿಶ್ವವಿದ್ಯಾಲಯದ ಕಾರ್ಯನಿರ್ವಾಹಕ ಸಂಸ್ಥೆಯಾಗಿರತಕ್ಕದ್ದು. ವ್ಯವಸ್ಥಾಪನಾ ಮಂಡಳಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ವ್ಯವಸ್ಥಾಪನಾ ಮಂಡಳಿಯ ಎಲ್ಲಾ ಸಭೆಗಳಲ್ಲಿ ಯಾವಾಗಲೂ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು ಹಾಗೂ ಕುಲಪತಿಯವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೇ ಇದ್ದ ಸಂದರ್ಭದಲ್ಲಿ ಸಭೆಯಲ್ಲಿ ಹಾಜರಿರುವ ಸದಸ್ಯರು ಚುನಾಯಿಸಿದ ಯಾವುದೇ ಇತರ ಸದಸ್ಯರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ವ್ಯವಸ್ಥಾಪನಾ ಮಂಡಳಿಯ ಸಭೆಯಲ್ಲಿ ಯಾವುದೇ ವಿಷಯವನ್ನು ಕುರಿತು ವಿವಾದ ಉಂಟಾದಲ್ಲಿ ಸದರಿ ವಿಷಯವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯದ ಬಗ್ಗೆ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**25. ಶೈಕ್ಷಣಿಕ ಪರಿಷತ್ತು.–**(1) ಶೈಕ್ಷಣಿಕ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಕಾರ್ಯದರ್ಶಿಗಳು

(iv) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಶೈಕ್ಷಣಿಕ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಶೈಕ್ಷಣಿಕ ಸಂಸ್ಥೆಯಾಗಿರತಕ್ಕದ್ದು ಮತ್ತು ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಹಾಗೂ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**26. ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು.–** (1) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಸಂಶೋಧನಾ ಮತ್ತು ಅನ್ವೇಷಣಾ ಸಮಿತಿಯಾಗಿರತಕ್ಕದ್ದು ಹಾಗೂ ಸಂಶೋಧನಾ ಕ್ಷೇತ್ರಗಳ ಆದ್ಯತೆಯೂ ಒಳಗೊಂಡಂತೆ, ವಿಶ್ವವಿದ್ಯಾಲಯವು ಕೈಗೊಳ್ಳಬೇಕಾದ ಸಂಶೋಧನೆಯ ಬಗ್ಗೆ ಒಂದು ವ್ಯಾಪಕವಾದ ಪರಿಪೂರ್ಣ ಭವಿಷ್ಯದ್ ದೃಷ್ಟಿಯನ್ನು ಒದಗಿಸತಕ್ಕದ್ದು. ಈ ಪರಿಷತ್ತು, ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಮತ್ತು ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಸಂಶೋಧನೆ ಮತ್ತು ಅನ್ವೇಷಣಾ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಸಂಶೋಧನೆಯ ಡೀನ್ – ಕಾರ್ಯದರ್ಶಿ

(iv) ಅನ್ವೇಷಣಾ ವಿಭಾಗದ ಮುಖ್ಯಸ್ಥರು – ಸದಸ್ಯರು

(v) ಎಲ್ಲಾ ವ್ಯಾಸಂಗ ವಿಭಾಗಗಳ ಡೀನ್‌ಗಳು – ಸದಸ್ಯರು ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

**27. ಹಣಕಾಸು ಸಮಿತಿ.**– (1) ಹಣಕಾಸು ಸಮಿತಿ ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

| | | |
|---|---|---|
| (i) | ಕುಲಾಧಿಪತಿಯವರು ಅಥವಾ ಅವರ ನಾಮನಿರ್ದೇಶಿತರು | – ಅಧ್ಯಕ್ಷರು |
| (ii) | ಕುಲಪತಿಯವರು | – ಸದಸ್ಯರು |
| (iii) | ಕುಲಸಚಿವರು | – ಸದಸ್ಯರು |
| (iv) | ಹಣಕಾಸು ಅಧಿಕಾರಿ | – ಕಾರ್ಯದರ್ಶಿ |
| (v) | ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು | – ಸದಸ್ಯರು; ಮತ್ತು |
| (vi) | ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು. | |

(2) ಹಣಕಾಸು ಸಮಿತಿಯು ಹಣಕಾಸಿನ ವಿಷಯಗಳನ್ನು ಕೈಗೊಳ್ಳುವ ವಿಶ್ವವಿದ್ಯಾಲಯದ ಪ್ರಧಾನ ಹಣಕಾಸು ಸಂಸ್ಥೆಯಾಗಿರತಕ್ಕದ್ದು ಹಾಗೂ ಅದು ಈ ಅಧಿನಿಯಮ, ನಿಯಮಗಳು ಮತ್ತು ಪರಿನಿಯಮಗಳ ಉಪಬಂಧಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಹಣಕಾಸು ವಿಷಯಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**28. ಇತರ ಪ್ರಾಧಿಕಾರಗಳು.**– ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ರಚನೆ, ಅಧಿಕಾರಗಳು ಹಾಗೂ ಪ್ರಕಾರ್ಯಗಳು ಪರಿನಿಯಮಗಳಿಂದ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

**29. ಒಂದು ಪ್ರಾಧಿಕಾರದ ಅಥವಾ ಸಂಸ್ಥೆಯ ಸದಸ್ಯತ್ವಕ್ಕೆ ಅನರ್ಹತೆ.**– ವಿಶ್ವವಿದ್ಯಾಲಯದ ಸಂಸ್ಥೆಗಳ ಯಾವುವೇ ಪ್ರಾಧಿಕಾರಗಳ ಒಬ್ಬ ವ್ಯಕ್ತಿಯು,-

(ಎ) ಅಸ್ವಸ್ಥ ಚಿತ್ತನಾಗಿದ್ದು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿಸಲ್ಪಟ್ಟಿದ್ದರೆ;

(ಬಿ) ಅವಿಮುಕ್ತ ದಿವಾಳಿಯಾಗಿದ್ದರೆ;

(ಸಿ) ನೈತಿಕ ಅಧಃಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದರೆ;

(ಡಿ) ಖಾಸಗಿ ಬೋಧನಾ ತರಗತಿಗಳನ್ನು ನಡೆಸುತ್ತಿದ್ದರೆ ಅಥವಾ ಸ್ವತಃ ನಿರತನಾಗಿದ್ದರೆ;

(ಇ) ಯಾವುದೇ ವಿಧದಲ್ಲಿ, ಎಲ್ಲಿಯೇ, ಯಾವುದೇ ಪರೀಕ್ಷೆಯನ್ನು ನಡೆಸುವಲ್ಲಿ ಅನುಚಿತ ಅಭ್ಯಾಸದಲ್ಲಿ ತೊಡಗಿದ್ದಕ್ಕಾಗಿ ಅಥವಾ ಉತ್ತೇಜಿಸಿದ್ದಕ್ಕಾಗಿ ದಂಡಿತನಾಗಿದ್ದರೆ;

(ಎಫ್) ಪ್ರಾಯೋಜಿತ ಸಂಸ್ಥೆಯು ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಯಾವೊಬ್ಬ ಸದಸ್ಯನನ್ನು ಆ ಪದವನ್ನು ಹೊಂದಿರುವುದಕ್ಕೆ ಅರ್ಹನಲ್ಲನೆಂದು ಲಿಖಿತದಲ್ಲಿ ಅಭಿಪ್ರಾಯ ನೀಡಿದಾಗಲೆಲ್ಲಾ,

–ಸದಸ್ಯನಾಗಿರುವುದಕ್ಕೆ ಅನರ್ಹನಾಗತಕ್ಕದ್ದು.

**30. ಖಾಲಿಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ.**– ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಕಾರ್ಯ ಅಥವಾ ವ್ಯವಹರಣೆಗಳು ಕೇವಲ ಅದರಲ್ಲಿ ಯಾವುದೇ ಖಾಲಿಸ್ಥಾನ ಇದೆ ಎಂಬ ಕಾರಣದಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣದಿಂದ ಮಾತ್ರವೇ ಅಸಿಂಧುವಾಗತಕ್ಕದ್ದಲ್ಲ.

**31. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು.**– (1) ಯಾವುವೇ ಕಾರ್ಯಸೂಚಿ ವಿಷಯಗಳನ್ನು ಕುಲಾಧಿಪತಿಯವರ ಪೂರ್ವಾನುಮೋದನೆಯನ್ನು ಪಡೆಯದೇ ಪ್ರಬಂಧಕ ಮಂಡಳಿಯ ಅಥವಾ ಕಾರ್ಯಕಾರಿ ಪರಿಷತ್ತು ಅಥವಾ ಯಾವುದೇ ಸಮಿತಿಯ ಸಭೆಗಳ ಕಾರ್ಯಸೂಚಿ ವಿಷಯಗಳಲ್ಲಿ ಸೇರಿಸತಕ್ಕದ್ದಲ್ಲ ಅಥವಾ ಚರ್ಚೆಗೆ ತೆಗೆದುಕೊಳ್ಳತಕ್ಕದ್ದಲ್ಲ ಮತ್ತು ತೀರ್ಮಾನಿಸತಕ್ಕದ್ದಲ್ಲ.

(2) ಈ ಅಧಿನಿಯಮದ ಯಾವುದೇ ಉಪಬಂಧಗಳನ್ನು ಪಾಲಿಸದೆ ಇರುವ ಸಂದರ್ಭದಲ್ಲಿ, ಕುಲಾಧಿಪತಿಯವರು ವಿಶ್ವವಿದ್ಯಾಲಯದ ಯಾವುದೇ ಪದಾಧಿಕಾರಿ ಅಥವಾ ಸಂಸ್ಥೆಯು ತೆಗೆದುಕೊಂಡ ಎಲ್ಲಾ ತೀರ್ಮಾನಗಳನ್ನು ವಿಪರ್ಯಯಗೊಳಿಸುವ ಮೂಲಕ ಪರಿಹಾರ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಅಧಿಕಾರವನ್ನು ಎಲ್ಲಾ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಅಂಥ ಪರಿಹಾರ ಕ್ರಮದ ಪರಿಣಾಮವಾಗಿ ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ವಿಶ್ವವಿದ್ಯಾಲಯದ ಪದಾಧಿಕಾರಿ ಅಥವಾ ಸಂಸ್ಥೆಯು ಕೈಗೊಂಡಿದ್ದ ಎಲ್ಲಾ ಅಂಥ ಕ್ರಮಗಳು, ಮೊದಲಿನಿಂದಲೂ ಶೂನ್ಯ ಮತ್ತು ಅಕೃತ ಎಂದು ಭಾವಿಸತಕ್ಕದ್ದು ಹಾಗೂ ತತ್ಪರಿಣಾಮವಾಗಿ, ಉಪಬಂಧ ಪಾಲಿಸದೇ ಇದ್ದ ವಿಷಯ ಅಥವಾ ನಿರ್ಧಾರದ ಸಂಬಂಧದಲ್ಲಿ ಅದಕ್ಕೆ ಮುಂಚೆ ಇದ್ದ ವಸ್ತುಸ್ಥಿತಿಯೇ ಮುಂದುವರಿಯತಕ್ಕದ್ದು.

## ಅಧ್ಯಾಯ – V

## ಪರಿನಿಯಮಗಳು ಮತ್ತು ವಿನಿಯಮಗಳು

**32. ಪರಿನಿಯಮಗಳು.**– ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಪರಿನಿಯಮಗಳು ವಿಶ್ವವಿದ್ಯಾಲಯಕ್ಕೆ ಮತ್ತು ಸಿಬ್ಬಂದಿಗೆ ಸಂಬಂಧಿಸಿದ ಎಲ್ಲಾ ಅಥವಾ ಯಾವುದೇ ವಿಷಯಕ್ಕೆ ಈ ಕೆಳಗಿನಂತೆ ಉಪಬಂಧ ಕಲ್ಪಿಸಬಹುದು, ಎಂದರೆ:-

(i) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಕಾರ್ಯಕಲಾಪಗಳನ್ನು ನಡೆಸುವ ಮತ್ತು ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸದಿರುವ ಸಂಸ್ಥೆಗಳ ರಚನೆಯ ಕಾರ್ಯವಿಧಾನ;

(ii) ಶಾಶ್ವತ ಶಾಸನಬದ್ಧ ದತ್ತಿ ನಿಧಿ, ವಿಶ್ವವಿದ್ಯಾಲಯ ದತ್ತಿ ನಿಧಿ, ಸಾಮಾನ್ಯ ನಿಧಿ ಹಾಗೂ ಅಭಿವೃದ್ಧಿ ನಿಧಿಗಳ ನಿರ್ವಹಣೆ;

(iii) ಕುಲಪತಿಗಳು, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರ ನೇಮಕಾತಿಯ ನಿಬಂಧನೆಗಳು ಹಾಗೂ ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಪ್ರಕಾರ್ಯಗಳು;

(iv) ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ, ಅಧ್ಯಾಪಕರ ಮತ್ತು ನೌಕರರ ನೇಮಕಾತಿ ವಿಧಾನ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(v) ವಿಶ್ವವಿದ್ಯಾಲಯ ಹಾಗೂ ಅದರ ಅಧಿಕಾರಿಗಳು, ವ್ಯಾಸಂಗ ವಿಭಾಗದ (ಫ್ಯಾಕಲ್ಟಿ) ಸದಸ್ಯರು, ನೌಕರರು ಹಾಗೂ ವಿದ್ಯಾರ್ಥಿಗಳ ನಡುವೆ ಉಂಟಾದ ವಿವಾದಗಳನ್ನು ಪರಿಹರಿಸುವ ಕಾರ್ಯವಿಧಾನ;

(vi) ವಿಭಾಗಗಳು ಮತ್ತು ವ್ಯಾಸಂಗ ವಿಭಾಗಗಳ (ಫ್ಯಾಕಲ್ಟಿಗಳ) ಸೃಜನೆ, ರದ್ದತಿ ಅಥವಾ ಪುನಾರಚನೆ;

(vii) ಇತರ ವಿಶ್ವವಿದ್ಯಾಲಯಗಳು ಅಥವಾ ಉನ್ನತ ಕಲಿಕಾ ಸಂಸ್ಥೆಗಳ ಜೊತೆಯಲ್ಲಿ ಸಹಕರಿಸಬೇಕಾದ ರೀತಿ;

(viii) ಗೌರವ ಪದವಿಗಳ ನೀಡಿಕೆಯ ಕಾರ್ಯವಿಧಾನ;

(ix) ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿವೇತನ ಮಂಜೂರಾತಿಗೆ ಸಂಬಂಧಿಸಿದ ಉಪಬಂಧಗಳು;

(x) ವಿವಿಧ ವ್ಯಾಸಂಗ ಕ್ರಮಗಳಲ್ಲಿನ ಸೀಟುಗಳ ಸಂಖ್ಯೆಗೆ ಸಂಬಂಧಿಸಿದ ಕಾರ್ಯನೀತಿಗಳು ಮತ್ತು ಅಂಥ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಕಾರ್ಯವಿಧಾನ;

(xi) ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಶುಲ್ಕಕ್ಕೆ ಸಂಬಂಧಿಸಿದ ಕಾರ್ಯನೀತಿ;

(xii) ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಉಚಿತ ಶಿಕ್ಷಣ, ಪದಕಗಳು ಹಾಗೂ ಬಹುಮಾನಗಳನ್ನು ಪ್ರಾರಂಭಿಸುವುದು;

(xiii) ಪ್ರಬಂಧಕ ಮಂಡಳಿಯು ನಿರ್ಧರಿಸಬಹುದಾದ ಅಥವಾ ಈ ಅಧಿನಿಯಮದ ಅಡಿಯಲ್ಲಿ ಪರಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬೇಕಾದ ಅಗತ್ಯತೆಯುಳ್ಳ ಯಾವುದೇ ಇತರ ವಿಷಯಗಳು.

**33. ಪರಿನಿಯಮಗಳ ರಚನೆ ವಿಧಾನ.–** (1) ವ್ಯವಸ್ಥಾಪನಾ ಮಂಡಳಿಯು ರಚಿಸಿದ ಮೊದಲ ಪರಿನಿಯಮಗಳನ್ನು ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ವ್ಯವಸ್ಥಾಪನಾ ಮಂಡಳಿಯು ಸಲ್ಲಿಸಿದ ಮೊದಲ ಪರಿನಿಯಮಗಳನ್ನು ಪ್ರಬಂಧಕ ಮಂಡಳಿಯು ಪರಿಗಣಿಸತಕ್ಕದ್ದು ಹಾಗೂ ತಾನು ಅವಶ್ಯವೆಂದು ಭಾವಿಸಬಹುದಾದ ಅಂಥ ಮಾರ್ಪಾಡುಗಳು, ಯಾವುದಾದರು ಇದ್ದಲ್ಲಿ, ಅವುಗಳೊಡನೆ ತನ್ನ ಅನುಮೋದನೆಯನ್ನು ನೀಡತಕ್ಕದ್ದು.

(3) ವಿಶ್ವವಿದ್ಯಾಲಯವು, ಪ್ರಬಂಧಕ ಮಂಡಳಿಯು ಅನುಮೋದಿಸಿದ ಮೊದಲ ಪರಿನಿಯಮಗಳನ್ನು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ಪ್ರಕಟಿಸತಕ್ಕದ್ದು ಮತ್ತು ತದನಂತರ ಮೊದಲ ಪರಿನಿಯಮಗಳ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**34. ಪರಿನಿಯಮಗಳ ತಿದ್ದುಪಡಿಯ ಅಧಿಕಾರ.–** ಪ್ರಬಂಧಕ ಮಂಡಳಿಯು ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸಬಹುದು ಅಥವಾ ಪರಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ಅವನ್ನು ನಿರಸನಗೊಳಿಸಬಹುದು.

**35. ವಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ವಿನಿಯಮಗಳು ಈ ಮುಂದಿನ ವಿಷಯಗಳಿಗೆ ಉಪಬಂಧಗಳನ್ನು ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ವಿದ್ಯಾರ್ಥಿ ಪಟ್ಟಿಯಲ್ಲಿ ಅವರುಗಳ ದಾಖಲಾತಿ ಹಾಗೂ ಮುಂದುವರಿಕೆ;

(ii) ವಿಶ್ವವಿದ್ಯಾಲಯದ ಎಲ್ಲಾ ಪದವಿಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ನಿಗದಿಪಡಿಸತಕ್ಕ ವ್ಯಾಸಂಗ ಕ್ರಮಗಳು;

(iii) ಪದವಿಗಳ ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರದಾನ;

(iv) ಸಂಶೋಧನಾ ವೇತನಗಳು (ಫೆಲೋಶಿಪ್), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಪದಕಗಳು ಮತ್ತು ಬಹುಮಾನಗಳನ್ನು ನೀಡಲು ಷರತ್ತುಗಳು;

(v) ಪರೀಕ್ಷೆಗಳನ್ನು ನಡೆಸುವುದು ಹಾಗೂ ಪರೀಕ್ಷೆ ನಡೆಸುವ ಸಂಸ್ಥೆಗಳು, ಪರೀಕ್ಷಕರು, ಪರೀಕ್ಷಾ ಮೇಲ್ವಿಚಾರಕರು, ಟ್ಯಾಬುಲೇಟರ್‌ಗಳು ಮತ್ತು ಮಾಡರೇಟರ್‌ಗಳ ನೇಮಕಾತಿ ಷರತ್ತುಗಳು ಮತ್ತು ವಿಧಾನ ಹಾಗೂ ಅವರ ಕರ್ತವ್ಯಗಳು;

(vi) ವಿಶ್ವವಿದ್ಯಾಲಯದ ಪರೀಕ್ಷೆಗಳಿಗೆ, ಪದವಿಗಳಿಗೆ ಹಾಗೂ ಇತರ ಶೈಕ್ಷಣಿಕ ಪ್ರಶಸ್ತಿಗಳಿಗೆ ಪ್ರವೇಶಕ್ಕೆ ವಿಧಿಸತಕ್ಕ ಶುಲ್ಕ;

(vii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನಲ್ಲಿ ವಿದ್ಯಾರ್ಥಿಗಳ ನಿವಾಸಕ್ಕಾಗಿ ಷರತ್ತುಗಳು;

(viii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಶಿಸ್ತು ಪಾಲನೆ;

(ix) ಈ ಅಧಿನಿಯಮದ ಅಡಿಯಲ್ಲಿನ ಪರಿನಿಯಮಗಳಲ್ಲಿ ಉಪಬಂಧ ಕಲ್ಪಿಸಬಹುದಾಂಥ ಇತರ ಎಲ್ಲಾ ವಿಷಯಗಳು.

**36. ವಿನಿಯಮಗಳ ರಚನೆ ವಿಧಾನ.–** ವಿನಿಯಮಗಳನ್ನು ಶೈಕ್ಷಣಿಕ ಪರಿಷತ್ತು ರಚಿಸತಕ್ಕದ್ದು ಹಾಗೂ ವ್ಯವಸ್ಥಾಪನಾ ಮಂಡಳಿಯು ಅನುಮೋದಿಸತಕ್ಕದ್ದು.

**37. ವಿನಿಯಮಗಳ ತಿದ್ದುಪಡಿಗೆ ಅಧಿಕಾರ.–** ವ್ಯವಸ್ಥಾಪನಾ ಮಂಡಳಿಯ ಅನುಮೋದನೆಯೊಡನೆ ಶೈಕ್ಷಣಿಕ ಪರಿಷತ್ತು ಹೊಸ ವಿನಿಯಮಗಳನ್ನು ಅಥವಾ ಹೆಚ್ಚುವರಿ ವಿನಿಯಮಗಳನ್ನು ರಚಿಸಬಹುದು ಅಥವಾ ವಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ನಿರಸನಗೊಳಿಸಬಹುದು.

**38. ಶುಲ್ಕ ನಿಯಂತ್ರಣ ಸಮಿತಿ.–** (1) ಸರ್ಕಾರವು ರಚಿಸಿದ ನಿವೃತ್ತ ಸರ್ವೋಚ್ಚ ನ್ಯಾಯಾಲಯದ ಅಥವಾ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು ಮುಖ್ಯಸ್ಥರಾಗಿರುವ ಮತ್ತು ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ, ಉನ್ನತ ಶಿಕ್ಷಣ ಪ್ರಭಾರದಲ್ಲಿರುವ ಸರ್ಕಾರದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು, ವೈದ್ಯಕೀಯ ಶಿಕ್ಷಣದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು, ಒಬ್ಬ ಮಹಿಳೆಯೂ ಸೇರಿದಂತೆ ಪ್ರಬಂಧಕ ಮಂಡಳಿಯು ನಾಮನಿರ್ದೇಶಿಸಿದ ಇಬ್ಬರು ಶಿಕ್ಷಣ ತಜ್ಞರು ಇವರುಗಳನ್ನು ಒಳಗೊಂಡ ಒಂದು ಶುಲ್ಕ ನಿಯಂತ್ರಣ ಸಮಿತಿಯು, 9ನೇ ಪ್ರಕರಣದ ಅಡಿಯಲ್ಲಿ ಕರ್ನಾಟಕದ ವಿದ್ಯಾರ್ಥಿಗಳಿಗಾಗಿ ಮೀಸಲಿರಿಸಿದ ವಿಶ್ವವಿದ್ಯಾಲಯದ ಸ್ಥಾನಗಳ ಶುಲ್ಕವನ್ನು ನಿಯಂತ್ರಿಸತಕ್ಕದ್ದು. ಸಮಿತಿಯಲ್ಲಿ ಈ ಉದ್ದೇಶಕ್ಕಾಗಿ ಒಬ್ಬರು ಖ್ಯಾತ ಚಾರ್ಟರ್ಡ್ ಅಕೌಂಟೆಂಟ್ ರವರನ್ನು ಸಹ ಸದಸ್ಯನನ್ನಾಗಿ ಸೇರಿಸಿಕೊಳ್ಳತಕ್ಕದ್ದು.

(2) ಸಮಿತಿಯು ವಿಶ್ವವಿದ್ಯಾಲಯದ ಪ್ರವೇಶಗಳ ಮತ್ತು ಶುಲ್ಕದ ಸಂಗ್ರಹಣೆಯ ಅನುಪಾಲನೆಯನ್ನು ನೋಡಿಕೊಳ್ಳತಕ್ಕದ್ದು.

## ಅಧ್ಯಾಯ – VI
## ಸಂಕೀರ್ಣ

**39. ನೌಕರರ ಸೇವಾ ಷರತ್ತುಗಳು.–** (1) ಪರಿನಿಯಮಗಳ ಮತ್ತು ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಥವಾ ನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳು, ಯಾವುದಾದರೂ ಇದ್ದಲ್ಲಿ, ಅವುಗಳಿಗೆ ಒಳಪಟ್ಟು ಪ್ರತಿಯೊಬ್ಬ ನೌಕರನು ಲಿಖಿತ ಕರಾರಿನ ಅಡಿಯಲ್ಲಿ ನೇಮಕಗೊಳ್ಳತಕ್ಕದ್ದು ಮತ್ತು ಅದನ್ನು ವಿಶ್ವವಿದ್ಯಾಲಯದಲ್ಲಿ ಇಟ್ಟುಕೊಳ್ಳತಕ್ಕದ್ದು ಹಾಗೂ ಅದರ ಪ್ರತಿಯನ್ನು ಸಂಬಂಧಪಟ್ಟ ನೌಕರನಿಗೆ ನೀಡತಕ್ಕದ್ದು.

(2) ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಕಾರ್ಯವಿಧಾನಗಳ ಮೂಲಕ ನಿಯಂತ್ರಿಸತಕ್ಕದ್ದು.

(3) ಕರಾರಿನಿಂದಾಗಿ ವಿಶ್ವವಿದ್ಯಾಲಯ ಮತ್ತು ನೌಕರನ ಮಧ್ಯದಲ್ಲಿ ಉದ್ಭವಿಸಬಹುದಾದ ಯಾವುದೇ ವಿವಾದವನ್ನು, ಲಿಖಿತ ಕರಾರಿನಲ್ಲಿ ಉಪಬಂಧಿಸಿದ ವಿಧಾನದಲ್ಲಿ ಹಾಗೂ ಪರಿನಿಯಮಗಳ ಅನುಸಾರವಾಗಿ ಪರಿಹರಿಸತಕ್ಕದ್ದು.

**40. ಮೇಲ್ಮನವಿ ಹಕ್ಕು.–** ವಿಶ್ವವಿದ್ಯಾಲಯವು ತನ್ನ ನೌಕರರ ಅಥವಾ ವಿದ್ಯಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡ ಸಂದರ್ಭದಲ್ಲಿ, ಬಾಧಿತ ನೌಕರ ಅಥವಾ ವಿದ್ಯಾರ್ಥಿಗಳು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಮೇಲ್ಮನವಿ ಹಕ್ಕನ್ನು ಹೊಂದಿರತಕ್ಕದ್ದು.

**41. ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿ .–** ವಿಶ್ವವಿದ್ಯಾಲಯವು, ತನ್ನ ನೌಕರರ ಪ್ರಯೋಜನಕ್ಕಾಗಿ, ಪರಿನಿಯಮಗಳು ಮತ್ತು ಜಾರಿಯಲ್ಲಿರುವ ಕಾನೂನುಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿಯನ್ನು ರಚಿಸತಕ್ಕದ್ದು ಹಾಗೂ ಅಂಥ ವಿಮಾ ಯೋಜನೆಗಳನ್ನು ಒದಗಿಸತಕ್ಕದ್ದು.

**42. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಇತರ ಸಂಸ್ಥೆಯ ಸದಸ್ಯನಾಗಿ ಯಾವೊಬ್ಬ ವ್ಯಕ್ತಿಯು ಸೂಕ್ತವಾಗಿ ಆಯ್ಕೆಯಾಗಿದ್ದಾನೆಯೇ ಅಥವಾ ನೇಮಕಗೊಂಡಿದ್ದಾನೆಯೇ ಅಥವಾ ಅದಕ್ಕೆ ಅರ್ಹನಾಗಿದ್ದಾನೆಯೇ ಎಂಬ ಯಾವುದೇ ಪ್ರಶ್ನೆ ಉದ್ಭವಿಸಿದರೆ, ಆ ವಿಷಯವನ್ನು ತೀರ್ಮಾನಕ್ಕಾಗಿ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**43. ಸಮಿತಿಗಳ ರಚನೆ.–** 22ನೇ ಪ್ರಕರಣದಲ್ಲಿ ನಮೂದಿಸಿದ ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಅಧಿಕಾರವನ್ನು ಹೊಂದಿರುವ ಅಂಥ ಸದಸ್ಯರನ್ನು ಒಳಗೊಂಡ ಅಂಥ ಪ್ರಾಧಿಕಾರದ ಒಂದು ಸಮಿತಿಯನ್ನು ರಚಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**44. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಂಸ್ಥೆಯ ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ಪೈಕಿ ಯಾವುದೇ ಸ್ಥಾನವು ಆಕಸ್ಮಿಕವಾಗಿ ಖಾಲಿಯಾದರೆ, ಯಾರ ಸ್ಥಾನವು ಖಾಲಿಯಾಗಿ ತುಂಬಬೇಕಾಗಿ ಬಂದಿದೆಯೋ ಆ ಸದಸ್ಯನನ್ನು ಯಾವ ರೀತಿಯಲ್ಲಿ ಆರಿಸಲಾಗಿತ್ತೋ ಅದೇ ರೀತಿಯಲ್ಲಿ ಹೊಸ ಸದಸ್ಯನನ್ನು ಆರಿಸಿ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ಖಾಲಿ ಸ್ಥಾನವನ್ನು ಭರ್ತಿ ಮಾಡಿದ ವ್ಯಕ್ತಿಯು ಆತನು ಯಾವ ಸದಸ್ಯನ ಸ್ಥಾನದಲ್ಲಿ ಭರ್ತಿಯಾಗಿರುವನೋ ಆ ಸದಸ್ಯನು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯನಾಗಿ ಉಳಿಯುತ್ತಿದ್ದ ಬಾಕಿ ಅವಧಿಯವರೆಗೆ ಮಾತ್ರ ಸದಸ್ಯನಾಗಿರತಕ್ಕದ್ದು.

**45. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.–** ಈ ಅಧಿನಿಯಮ ಅಥವಾ ಪರಿನಿಯಮಗಳು ಅಥವಾ ನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ವಿಶ್ವವಿದ್ಯಾಲಯದ

ಯಾವೊಬ್ಬ ಅಧಿಕಾರಿ ಅಥವಾ ಇತರ ನೌಕರರ ವಿರುದ್ಧ ಯಾವುದೇ ದಾವೆ ಅಥವಾ ಇತರ ಕಾನೂನು ವ್ಯವಹರಣೆಗಳನ್ನು ನಡೆಸಲು ಅವಕಾಶ ಇರತಕ್ಕದ್ದಲ್ಲ.

**46. ತಾತ್ಕಾಲಿಕ ಉಪಬಂಧಗಳು.–** ಈ ಅಧಿನಿಯಮ ಮತ್ತು ಪರಿನಿಯಮಗಳ ಯಾವುದೇ ಇತರ ಉಪಬಂಧಗಳಲ್ಲಿ ಏನೇ ಇದ್ದರೂ,–

(i) ಮೊದಲ ಕುಲಪತಿ ಮತ್ತು ಸಹಕುಲಪತಿ, ಯಾರಾದರೂ ಇದ್ದರೆ, ಅವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(ii) ಮೊದಲ ಕುಲಸಚಿವರನ್ನು ಮತ್ತು ಮೊದಲ ಹಣಕಾಸು ಅಧಿಕಾರಿಯವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು; ಮತ್ತು

(iii) ಮೊದಲ ವ್ಯವಸ್ಥಾಪನ ಮಂಡಳಿ, ಮೊದಲ ಹಣಕಾಸು ಸಮಿತಿ, ಮೊದಲ ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಹಾಗೂ ಮೊದಲ ಶೈಕ್ಷಣಿಕ ಪರಿಷತ್ತನ್ನು ಕುಲಾಧಿಪತಿಯವರು ರಚಿಸತಕ್ಕದ್ದು.

**47. ಶಾಶ್ವತ ಶಾಸನಬದ್ಧ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಕನಿಷ್ಠ ಇಪ್ಪತ್ತೈದು ಕೋಟಿ ರೂಪಾಯಿಗಳನ್ನುಳ್ಳ ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು ಇದರ ಪೈಕಿ ಕನಿಷ್ಠ ಹದಿನೈದು ಕೋಟಿ ರೂಪಾಯಿಗಳು ನಗದು ರೂಪದಲ್ಲಿ ಮತ್ತು ಇನ್ನುಳಿದದ್ದು ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ಇರತಕ್ಕದ್ದು ಮತ್ತು ಇದನ್ನು ತಾನಾಗಿಯೆ ಹೆಚ್ಚಿಸಬಹುದಾಗಿದ್ದು ಆದರೆ ಕಡಿಮೆ ಮಾಡತಕ್ಕದ್ದಲ್ಲ.

ಪರಂತು, ಬೆಂಗಳೂರು ಅಥವಾ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊರಗಿರುವ ವಿಶ್ವವಿದ್ಯಾಲಯದ ಸಂದರ್ಭದಲ್ಲಿ ಕನಿಷ್ಠ ಹತ್ತು ಕೋಟಿ ರೂಪಾಯಿಗಳು ನಗದು ರೂಪದಲ್ಲಿರತಕ್ಕದ್ದು ಮತ್ತು ಉಳಿದ ಐದು ಕೋಟಿ ರೂಪಾಯಿಗಳು ಬ್ಯಾಂಕ್ ಗ್ಯಾರಂಟಿಯ ರೂಪದಲ್ಲಿರತಕ್ಕದ್ದು.

(2) ವಿಶ್ವವಿದ್ಯಾಲಯವು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಹಣವನ್ನು ಹೂಡಲು ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯವು ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಗೆ ವರ್ಗಾವಣೆ ಮಾಡಬಹುದು. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನೂ ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(4) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಿದ ವರಮಾನದ ಶೇಕಡಾ ಎಪ್ಪತ್ತೈದರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತೈದರಷ್ಟನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಯಲ್ಲಿ ಪುನ: ತೊಡಗಿಸತಕ್ಕದ್ದು.

**48. ವಿಶ್ವವಿದ್ಯಾಲಯದ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ನಿಧಿಗಳನ್ನು ಒಳಗೊಂಡ ವಿಶ್ವವಿದ್ಯಾಲಯದ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದು ಕಾಲಕಾಲಕ್ಕೆ ಸ್ವೀಕರಿಸಬಹುದಾದ ದೇಣಿಗೆಗಳು ಮತ್ತು ಇತರ ನಿಧಿಗಳನ್ನು ಒಳಗೊಂಡಿರತಕ್ಕದ್ದು.

(2) ವಿಶ್ವವಿದ್ಯಾಲಯವು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ವಿಶ್ವವಿದ್ಯಾಲಯದ ದತ್ತಿನಿಧಿಯನ್ನು ಹೂಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯ ದತ್ತಿ ನಿಧಿಯು, ವಿಶ್ವವಿದ್ಯಾಲಯವು ತನ್ನ ಸಾಮಾಜಿಕ ಧ್ಯೇಯೋದ್ದೇಶಗಳನ್ನು ನೆರವೇರಿಸುವ ಸಂದರ್ಭದಲ್ಲಿ ಮತ್ತು/ಅಥವಾ ಮುಂಗಾಣದ ಸನ್ನಿವೇಶದಲ್ಲಿ ಉದ್ಭವಿಸಬಹುದಾದ ಹಣಕಾಸು ಸವಾಲುಗಳಿಂದ ತನ್ನನ್ನು ರಕ್ಷಿಸಿಕೊಳ್ಳುವುದಕ್ಕಾಗಿ, ಸ್ವಇಚ್ಛೆಯಿಂದ ನಿರ್ವಹಿಸಿಕೊಂಡು ಬರಲು ಮತ್ತು ಜವಾಬ್ದಾರಿಯಿಂದ ಹಣ ಹೂಡಿಕೆ ಮಾಡಲು ಇಚ್ಛೆಯುಳ್ಳವರಾಗಿ ಸ್ವಯಂ ವಿಧಿಸಿಕೊಂಡ ನಿಧಿಯಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಗೆ ವರ್ಗಾಯಿಸಬಹುದು. ವಿಶ್ವವಿದ್ಯಾಲಯದ ಸಮಾಪಣೆಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನು ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(5) ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಬರುವ ವರಮಾನದ ಶೇಕಡಾ ಎಂಭತ್ತರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸದ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತರಷ್ಟನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**49. ಸಾಮಾನ್ಯ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಸಾಮಾನ್ಯ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯವು ವಿಧಿಸಬಹುದಾದ ಎಲ್ಲಾ ಶುಲ್ಕಗಳು;

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವುದೇ ಇತರ ಮೂಲದಿಂದ ಸ್ವೀಕರಿಸಲಾದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ದೇಣಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು;

(2) ಸಾಮಾನ್ಯ ನಿಧಿಗೆ ಜಮಾ ಮಾಡುವ ನಿಧಿಗಳನ್ನು ವಿಶ್ವವಿದ್ಯಾಲಯದ ಎಲ್ಲಾ ಆವರ್ತಕ ವೆಚ್ಚಗಳನ್ನು ಭರಿಸಲು ಉಪಯೋಗಿಸಕೊಳ್ಳತಕ್ಕದ್ದು.

**50. ಅಭಿವೃದ್ಧಿ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಅಭಿವೃದ್ಧಿ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿದ್ಯಾರ್ಥಿಗಳಿಂದ ವಿಧಿಸಬಹುದಾದ ಅಭಿವೃದ್ಧಿ ಶುಲ್ಕಗಳು;

(ii) ವಿಶ್ವವಿದ್ಯಾಲಯದ ಅಭಿವೃದ್ಧಿಯ ಉದ್ದೇಶಗಳಿಗಾಗಿ ಯಾವುದೇ ಇತರ ಮೂಲಗಳಿಂದ ಸ್ವೀಕರಿಸಿದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ವಂತಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು; ಮತ್ತು

(v) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಲಾದ ಎಲ್ಲಾ ವರಮಾನಗಳು.

(2) ಅಭಿವೃದ್ಧಿ ನಿಧಿಗೆ ಕಾಲಕಾಲಕ್ಕೆ ಜಮಾ ಮಾಡಿದ ನಿಧಿಯನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಉಪಯೋಗಿಸಕೊಳ್ಳತಕ್ಕದ್ದು.

**51. ನಿಧಿಗಳ ನಿರ್ವಹಣೆ.–** 47, 48, 49 ಮತ್ತು 50ನೇ ಪ್ರಕರಣಗಳಡಿಯಲ್ಲಿ ಸ್ಥಾಪಿಸಲಾದ ನಿಧಿಗಳನ್ನು ಪ್ರಬಂಧಕ ಮಂಡಳಿಯ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ನಿಯಂತ್ರಿಸತಕ್ಕದ್ದು ಹಾಗೂ ನಿರ್ವಹಿಸತಕ್ಕದ್ದು.

**52. ವಾರ್ಷಿಕ ವರದಿ.–** (1) ವಿಶ್ವವಿದ್ಯಾಲಯದ ವಾರ್ಷಿಕ ವರದಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ಅದರ ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಪ್ರಬಂಧಕ ಮಂಡಳಿಯು ವಾರ್ಷಿಕ ವರದಿಯನ್ನು ತನ್ನ ಸಭೆಯಲ್ಲಿ ಪರಿಗಣಿಸತಕ್ಕದ್ದು ಹಾಗೂ ಅದನ್ನು ಮಾರ್ಪಾಡುಗಳೊಡನೆ ಅಥವಾ ಮಾರ್ಪಾಡುಗಳಿಲ್ಲದೆ ಅನುಮೋದಿಸಬಹುದು.

(3) ಪ್ರಬಂಧಕ ಮಂಡಳಿಯು ಸೂಕ್ತವಾಗಿ ಅನುಮೋದಿಸಿದ ವಾರ್ಷಿಕ ವರದಿಯ ಒಂದು ಪ್ರತಿಯನ್ನು ಪ್ರತಿವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ಡಿಸೆಂಬರ್ 31ಕ್ಕೆ ಮೊದಲು ಸಂದರ್ಶಕರಿಗೆ ಮತ್ತು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**53. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.–** (1) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕ ಪತ್ರ ಮತ್ತು ಜಮಾ ಖರ್ಚು ಪಟ್ಟಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯಕ್ಕೆ ಎಲ್ಲಾ ಮೂಲಗಳಿಂದ ಪ್ರಾಪ್ತವಾಗುವ ಅಥವಾ ಸ್ವೀಕರಿಸಲಾಗುವ ಎಲ್ಲಾ ನಿಧಿಗಳು ಹಾಗೂ ವಿತರಿಸಿದ ಅಥವಾ ಸಂದಾಯ ಮಾಡಿದ ಎಲ್ಲಾ ಮೊಬಲಗುಗಳನ್ನು ವಿಶ್ವವಿದ್ಯಾಲಯವು ನಿರ್ವಹಿಸುವ ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕಪತ್ರಗಳನ್ನು ಪ್ರತಿ ವರ್ಷವೂ ಭಾರತದ ಚಾರ್ಟೆಡ್ ಅಕೌಂಟೆಂಟ್‌ಗಳ ಸಂಸ್ಥೆಯ ಸದಸ್ಯರಾಗಿರುವ ಒಬ್ಬ ಲೆಕ್ಕಪರಿಶೋಧಕರಿಂದ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಲೆಕ್ಕಪರಿಶೋಧನಾ ವರದಿಯೊಡನೆ, ಪ್ರತಿ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ನವೆಂಬರ್ 30ಕ್ಕೆ ಮೊದಲು ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(4) ವಾರ್ಷಿಕ ಲೆಕ್ಕಪತ್ರಗಳು, ಜಮಾಖರ್ಚು ಪಟ್ಟಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಪ್ರಬಂಧಕ ಮಂಡಳಿಯು ತನ್ನ ಸಭೆಯಲ್ಲಿ ಪರ್ಯಾಲೋಚಿಸತಕ್ಕದ್ದು ಮತ್ತು ಪ್ರಬಂಧಕ ಮಂಡಳಿಯು ಅದನ್ನು ತನ್ನ ಅಭಿಪ್ರಾಯಗಳೊಡನೆ ಸಂದರ್ಶಕರಿಗೆ ಹಾಗೂ ಸರ್ಕಾರಕ್ಕೆ ಪ್ರತಿ ವರ್ಷದ ಡಿಸೆಂಬರ್ 31ಕ್ಕೆ ಮೊದಲು ಕಳುಹಿಸತಕ್ಕದ್ದು.

(5) ಲೆಕ್ಕಪರಿಶೋಧಕರ ವರದಿಯಲ್ಲಿ ಯಾವುದೇ ಮುಖ್ಯ ಬದಲಾವಣೆ ಇದ್ದ ಸಂದರ್ಭದಲ್ಲಿ, ಅವುಗಳನ್ನು ಸರಿಪಡಿಸಲು ರಾಜ್ಯ ಸರ್ಕಾರವು ವಿಶ್ವವಿದ್ಯಾಲಯಕ್ಕೆ ನಿರ್ದೇಶನಗಳನ್ನು ಹೊರಡಿಬಹುದು ಮತ್ತು ಅಂಥ ನಿರ್ದೇಶನಗಳು ವಿಶ್ವವಿದ್ಯಾಲಯದ ಮೇಲೆ ಬಂಧನಕಾರಿಯಾಗಿರತಕ್ಕದ್ದು.

**54. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಮಿತಿಯ ಯಾವುದೇ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ ಅಥವಾ ಗೊತ್ತುವಳಿಯು ಅಥವಾ ವಿಶ್ವವಿದ್ಯಾಲಯದ ಸ್ವಾಧೀನದಲ್ಲಿರುವ ಇತರ ದಾಖಲೆಗಳು ಅಥವಾ ವಿಶ್ವವಿದ್ಯಾಲಯವು ಯುಕ್ತವಾಗಿ ನಿರ್ವಹಿಸುವ ಯಾವುದೇ ರಿಜಿಸ್ಟರ್‌ನಲ್ಲಿಯ ಯಾವುದೇ ನಮೂದುಗಳ ಪ್ರತಿಯನ್ನು, ಅದರ ಮೇಲೆ ಕುಲಸಚಿವರು ಪ್ರಮಾಣೀಕರಿಸಿದ್ದರೆ, ಅದನ್ನು ಅಂಥ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ, ಗೊತ್ತುವಳಿ ಅಥವಾ ದಾಖಲೆ ಅಥವಾ ರಿಜಿಸ್ಟರ್‌ನಲ್ಲಿ ಇರುವ ನಮೂದನ್ನು ಮೇಲ್ನೋಟದ ಸಾಕ್ಷ್ಯವೆಂಬುದಾಗಿ ಸ್ವೀಕರಿಸತಕ್ಕದ್ದು

ಮತ್ತು ವಿಷಯಗಳ ಸಾಕ್ಷಿಯಾಗಿ ಅಂಗೀಕರಿಸತಕ್ಕದ್ದು ಹಾಗೂ ಮೂಲ ದಾಖಲೆಗಳನ್ನೇ ಸಲ್ಲಿಸಿದ್ದರೆ ಅದನ್ನು, ದಾಖಲಿಸಿರುವ ವಿಷಯಗಳು ಮತ್ತು ವಹಿವಾಟುಗಳ ಸಾಕ್ಷ್ಯವಾಗಿ ಅಂಗೀಕರಿಸಲಾಗುತ್ತಿತ್ತೋ, ಅದೇ ರೀತಿಯಲ್ಲಿ ಇವನ್ನೂ ಸಾಕ್ಷ್ಯವಾಗಿ ಅಂಗೀಕರಿಸತಕ್ಕದ್ದು.

**55. ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ.–** ರಾಜ್ಯಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಥವಾ ಅದರಲ್ಲಿ ಇರುವ ಯಾವುವೇ ಉಪಬಂಧಗಳನ್ನು ಅಥವಾ ಅದರಡಿಯಲ್ಲಿ ರಚಿಸಿದ ಯಾವುವೇ ನಿಯಮಗಳು ಅಥವಾ ಆದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿರ್ದೇಶನ ನೀಡುವುದು ಅವಶ್ಯವೆಂದು ಅಥವಾ ಉಚಿತವೆಂದು ಅಭಿಪ್ರಾಯಪಟ್ಟಲ್ಲಿ ಅದು ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ ಅಥವಾ ಸಂದರ್ಭಾನುಸಾರವಾಗಿ ವ್ಯವಸ್ಥಾಪನಾ ಮಂಡಳಿಯು ಅಂಥ ಪ್ರತಿಯೊಂದು ನಿರ್ದೇಶನವನ್ನು ಪಾಲಿಸತಕ್ಕದ್ದು.

**56. ದಂಡಗಳು.–** (1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿತವಾದ ನಿಯಮಗಳು ಉಪಬಂಧಗಳನ್ನು ಅಥವಾ ಯಾವುದೇ ಪರೀಕ್ಷಾ ವಿಷಯಗಳನ್ನು ಅಥವಾ ಪದವಿಗಳನ್ನು ನೀಡುವುದಕ್ಕೆ ಅಥವಾ ಅಂಕಪಟ್ಟಿಗಳನ್ನು ನೀಡುವುದಕ್ಕೆ ಸಂಬಂಧಪಟ್ಟ ವಿಷಯಗಳಲ್ಲಿ ಉಲ್ಲಂಘನೆಗಳನ್ನು ಮಾಡುವ ಯಾವೊಬ್ಬ ವ್ಯಕ್ತಿಯು, ಅಪರಾಧ ನಿರ್ಣಯವಾದ ಮೇಲೆ, ಐವತ್ತು ಸಾವಿರ ರೂಪಾಯಿಗಳಿಗೆ ಕಡಿಮೆಯಲ್ಲದ ಆದರೆ ಹತ್ತು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಆರು ತಿಂಗಳ ಅವಧಿಗಿಂತ ಕಡಿಮೆಯಲ್ಲದ ಆದರೆ ಎರಡು ವರ್ಷಗಳ ಅವಧಿಯವರೆಗೆ ವಿಸ್ತರಿಸಬಹುದಾದ ಕಾರಾವಾಸದಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು:

ಪರಂತು, ಅಪರಾಧವನ್ನು ಎಸಗುವಲ್ಲಿ ವಿಶ್ವವಿದ್ಯಾಲಯವೂ ಸಹ ಒಳಗೊಂಡಿರುವಲ್ಲಿ, ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಈ ಅಧಿನಿಯಮದ ಅಡಿಯಲ್ಲಿ ಮಂಜೂರು ಮಾಡಲಾದ ಅನುಮತಿ ಪತ್ರವನ್ನು ಹಿಂತೆಗೆದುಕೊಳ್ಳತಕ್ಕದ್ದು.

(2) ಈ ಪ್ರಕರಣದ ಅಡಿಯಲ್ಲಿಯ ದಂಡವನ್ನು ಇತರ ಯಾವುದೇ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಲಾದ ದಂಡಕ್ಕೆ ಬಾಧಕವಾಗದಂತೆ ವಿಧಿಸಬಹುದು.

**57. ಪ್ರವೇಶಿಸುವ ಮತ್ತು ಪರಿಶೋಧಿಸುವ ಅಧಿಕಾರ.–** ಈ ಉದ್ದೇಶಕ್ಕಾಗಿ, ರಾಜ್ಯಸರ್ಕಾರದಿಂದ ಪ್ರಾಧಿಕೃತಗೊಂಡ 'ಎ' ಸಮೂಹದ ಅಧಿಕಾರಿ ದರ್ಜೆಗಿಂತ ಕಡಿಮೆ ಇಲ್ಲದ ದರ್ಜೆಯ ಯಾವೊಬ್ಬ ಅಧಿಕಾರಿಯು, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಶನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ 37) ಅಡಿಯಲ್ಲಿ ನಿರ್ದಿಷ್ಟಪಡಿಸಿರಬಹುದಾದ ಅಂಥ ಷರತ್ತುಗಳಿಗೆ ಒಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ, ಆ ಅಧಿನಿಯಮದ 9ನೇ ಪ್ರಕರಣದ ಅಡಿಯಲ್ಲಿ ಉಪಬಂಧಿಸಲಾದಂತಹವೇ ಅಧಿಕಾರಗಳನ್ನು ಚಲಾಯಿಸಲು ಮತ್ತು ಪ್ರಕಾರ್ಯಗಳನ್ನು ನೆರವೇರಿಸಲು ಅಧಿಕೃತನಾದ ಅಧಿಕಾರಿ ಎಂಬುದಾಗಿ ಭಾವಿಸತಕ್ಕದ್ದು.

**58. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ನಿರ್ದೇಶನವನ್ನು ನೀಡುವ ಅಧಿಕಾರ.–** (1) ವಿಶ್ವವಿದ್ಯಾಲಯವು ತನ್ನ ರಚನೆ ಅಥವಾ ನಿಗಮನವನ್ನು ನಿಯಂತ್ರಿಸುವ ಕಾನೂನಿಗೆ ಅನುಸಾರವಾಗಿ ತನ್ನ ಸಮಾಪನವನ್ನು ಉದ್ದೇಶಿಸಿದ್ದಲ್ಲಿ, ಅದು ಕನಿಷ್ಠ ಆರು ತಿಂಗಳ ಲಿಖಿತ ಪೂರ್ವ ಸೂಚನೆಯನ್ನು (ನೋಟಿಸು) ಸರ್ಕಾರಕ್ಕೆ ನೀಡತಕ್ಕದ್ದು.

(2) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಈ ಕೆಳಗಿನವುಗಳ ಬಗ್ಗೆ, ಎಂದರೆ:–

(i) ಪದವಿಯನ್ನು ನೀಡುವುದಕ್ಕಾಗಿ ಬೋಧನೆಯ ಗುಣಮಟ್ಟ;

(ii) ಶಿಕ್ಷಣದ ಗುಣಮಟ್ಟ;

(iii) ಉನ್ನತ ಶಿಕ್ಷಣದ ವ್ಯಾಪಾರೀಕರಣವನ್ನು ತಡೆಗಟ್ಟುವುದು;

(iv) ಅಧಿನಿಯಮದ ಉಪಬಂಧಗಳ ಉಲ್ಲಂಘನೆಯ ಬಗ್ಗೆ, ಯಾವುದಾದರೂ ಇದ್ದಲ್ಲಿ,

– ಇವುಗಳ ಬಗ್ಗೆ ನಿಯತಕಾಲಿಕ ಪರಿವೀಕ್ಷಣೆಯನ್ನು ನಡೆಸತಕ್ಕದ್ದು ಮತ್ತು ಸರ್ಕಾರಕ್ಕೆ ವರದಿಯನ್ನು ಕಳುಹಿಸತಕ್ಕದ್ದು.

(3) ದುರ್ವ್ಯವಹರಣೆ, ದುರಾಡಳಿತ ಮತ್ತು ಅಶಿಸ್ತು ಆಗಿದೆ ಎಂಬುದನ್ನು ಗುರುತಿಸಿದರೆ, ಸರ್ಕಾರವು, ವಿಶ್ವವಿದ್ಯಾಲಯದ ಆಡಳಿತವರ್ಗದವರಿಗೆ ಆಡಳಿತವನ್ನು ಸರಿಪಡಿಸಬೇಕೆಂದು ನಿರ್ದೇಶನಗಳನ್ನು ನೀಡತಕ್ಕದ್ದು. ನಿಯಮಿಸಬಹುದಾದ ಅಂಥ ಅವಧಿಯೊಳಗೆ ಆ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುವ ಹಕ್ಕು ಸರ್ಕಾರದಲ್ಲಿ ನಿಹಿತವಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ವಿಧಾನವು, ಸರ್ಕಾರವು ಈ ಸಂಬಂಧದಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು:

ಪರಂತು, ವಿಶ್ವವಿದ್ಯಾಲಯವು ತನ್ನ ಕಾರಣಗಳನ್ನು ಹೇಳಿಕೊಳ್ಳಲು ಸಮಂಜಸ ಅವಕಾಶಗಳನ್ನು ನೀಡಿದ ಹೊರತು ಅಂಥ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

(5) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೋಟಿಸನ್ನು ಸ್ವೀಕರಿಸಿದ ಮೇಲೆ, ಸರ್ಕಾರವು ಸಂಬಂಧಿಸಿದ ನಿಯಂತ್ರಣಾ ಪ್ರಾಧಿಕಾರದೊಡನೆ ಸಮಾಲೋಚಿಸಿ, ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ಅಥವಾ ವ್ಯಾಸಂಗ ಕ್ರಮವನ್ನು ಪರಿಸಮಾಪನಗೊಳಿಸಲು ಉದ್ದೇಶಿಸಿದ

ದಿನಾಂಕದಿಂದ, ವಿಶ್ವವಿದ್ಯಾಲಯದಲ್ಲಿ ನಿಯತ ವ್ಯಾಸಂಗ ಕ್ರಮಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕೊನೆಯ ತಂಡ (ಬ್ಯಾಚ್) ತನ್ನ ವ್ಯಾಸಂಗ ಕ್ರಮವನ್ನು ಮುಗಿಸುವವರೆಗೆ ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು.

**59. ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು.–** (1) 58ನೇ ಪ್ರಕರಣದ (5)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ಅದರ ಆಡಳಿತಾತ್ಮಕ ವೆಚ್ಚಗಳನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ನೇಮಿಸಬಹುದಾದ ಅಂಥ ವಿಧಾನದಲ್ಲಿ ಭರಿಸತಕ್ಕದ್ದು.

(2) ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ವಿಶ್ವವಿದ್ಯಾಲಯದ ವೆಚ್ಚವನ್ನು ಭರಿಸಲು 47, 48, 49, ಮತ್ತು 50ನೇ ಪ್ರಕರಣಗಳ ಅಡಿಯಲ್ಲಿ ಉಲ್ಲೇಖಿಸಲಾದ ನಿಧಿಯು ಸಾಕಷ್ಟು ಇಲ್ಲದಿದ್ದಲ್ಲಿ, ಅಂಥ ವೆಚ್ಚವನ್ನು ಸರ್ಕಾರವು, ವಿಶ್ವವಿದ್ಯಾಲಯದ ಸ್ವತ್ತುಗಳು ಮತ್ತು ಆಸ್ತಿಗಳನ್ನು ವಿಲೇ ಮಾಡುವ ಮೂಲಕ ಭರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಸಮಾಪನೆಯು ದುರ್ವ್ಯವಹರಣೆ ಅಥವಾ ದುರಾಡಳಿತದ ಕಾರಣಗಳಿಗಾಗಿ ಆಗಿದ್ದರೆ, ಸರ್ಕಾರವು ಅಂಥ ದುರ್ವ್ಯವಹಾರಕ್ಕೆ ಅಥವಾ ದುರಾಡಳಿತಕ್ಕೆ ಹೊಣೆಯಾಗಿರುವ ವ್ಯಕ್ತಿಗಳನ್ನು ಗುರುತಿಸುವ ಮತ್ತು ಅವರ ಮೇಲೆ ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ದಂಡನೆಯನ್ನು ವಿಧಿಸಲು ಸ್ವತಂತ್ರವಾಗಿರತಕ್ಕದ್ದು.

**60. ತೊಂದರೆಗಳ ನಿವಾರಣೆಗೆ ಅಧಿಕಾರ.–** (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಅಥವಾ ಆದೇಶದ ಮೂಲಕ ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಐದು ವರ್ಷಗಳು ಮುಕ್ತಾಯವಾದ ತರುವಾಯ ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಅಧಿಸೂಚನೆ ಅಥವಾ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

**61. ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ.–** (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಉಭಯ ಸದನಗಳು ಒಪ್ಪಿದರೆ ತದನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ದತಿಯು ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವನ್ನು ಉಂಟುಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಜಿ.ಕೆ. ಬೋರೇಗೌಡ
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪ್ರ7) (೫೦೦ ಪ್ರತಿಗಳು)

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| ಭಾಗ-IVA | ಬೆಂಗಳೂರು, ಶನಿವಾರ, ಏಪ್ರಿಲ್ ೨೧, ೨೦೧೮ (ವೈಶಾಖ ೦೧, ಶಕ ವರ್ಷ ೧೯೪೦) | ನಂ. ೬೦೪ |
|---|---|---|
| Part-IVA | Bengaluru, Saturday, April 21, 2018 (Vyashaka 01, Shaka Varsha 1940) | No. 604 |


ಸಂಸದೀಯ ವ್ಯವಹಾರಗಳ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಂವ್ಯಶಾಇ 53 ಶಾಸನ 2017, ಬೆಂಗಳೂರು, ದಿನಾಂಕ: 21-04-2018

ಜಗತ್ ವಿಶ್ವವಿದ್ಯಾಲಯ ವಿಧೇಯಕ, 2018ಕ್ಕೆ 2018ರ ಏಪ್ರಿಲ್ ತಿಂಗಳ 19ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2018ರ ಕರ್ನಾಟಕ ಅಧಿನಿಯಮ ಸಂಖ್ಯೆ:20 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2018ರ ಕರ್ನಾಟಕ ಅಧಿನಿಯಮ ಸಂಖ್ಯೆ: 20**

(2018ರ ಏಪ್ರಿಲ್ ತಿಂಗಳ 21ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಜಗತ್ ವಿಶ್ವವಿದ್ಯಾಲಯ ಅಧಿನಿಯಮ, 2018**

(2018ರ ಏಪ್ರಿಲ್ ತಿಂಗಳ 19ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮೋದನೆಯನ್ನು ಪಡೆಯಲಾಗಿದೆ)

ಸಾಮಾನ್ಯ, ತಾಂತ್ರಿಕ, ಆರೋಗ್ಯ, ವ್ಯವಸ್ಥಾಪನೆ, ಕೃಷಿ, ತೋಟಗಾರಿಕೆ, ಕಾನೂನು ಮತ್ತು ಜೀವ ವಿಜ್ಞಾನಗಳ ವಿಶ್ವವಿದ್ಯಾಲಯ ಶಿಕ್ಷಣವನ್ನು ಮುಂದುವರಿಸುವುದಕ್ಕಾಗಿ ಮತ್ತು ಅಭಿವೃದ್ಧಿ ಕೈಗೊಳ್ಳುವುದಕ್ಕಾಗಿ ಲಾರ್ಡ್ ಉಡುಪಿ ಕೃಷ್ಣ ಏಜುಕೇಷನಲ್ ಟ್ರಸ್ಟ್ (ರಿ.) ಇವರು, ಖಾಸಗಿ ವಲಯದಲ್ಲಿ ಏಕರೂಪ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದಕ್ಕಾಗಿ ಮತ್ತು ಅದಕ್ಕೆ ಪ್ರಾಸಂಗಿಕವಾದ ಅಥವಾ ಅದಕ್ಕೆ ಆನುಷಂಗಿಕವಾದ ವಿಷಯಗಳಿಗಾಗಿ ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಸಾಮಾನ್ಯ, ತಾಂತ್ರಿಕ, ಆರೋಗ್ಯ, ವ್ಯವಸ್ಥಾಪನೆ, ಕೃಷಿ, ತೋಟಗಾರಿಕೆ, ಕಾನೂನು ಮತ್ತು ಜೀವ ವಿಜ್ಞಾನಗಳ ವಿಶ್ವವಿದ್ಯಾಲಯ ಶಿಕ್ಷಣವನ್ನು ಮುಂದುವರಿಸುವುದಕ್ಕಾಗಿ ಮತ್ತು ಅಭಿವೃದ್ಧಿ ಕೈಗೊಳ್ಳುವುದಕ್ಕಾಗಿ ಲಾರ್ಡ್ ಉಡುಪಿ ಕೃಷ್ಣ ಏಜುಕೇಷನಲ್ ಟ್ರಸ್ಟ್ (ರಿ.) ಖಾಸಗಿ ವಲಯದಲ್ಲಿ ಏಕರೂಪ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದಕ್ಕಾಗಿ ಮತ್ತು ಅದಕ್ಕೆ ಪ್ರಾಸಂಗಿಕವಾದ ಅಥವಾ ಅದಕ್ಕೆ ಆನುಷಂಗಿಕವಾದ ವಿಷಯಗಳಿಗಾಗಿ ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೊಂಬತ್ತನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

## ಅಧ್ಯಾಯ – I

## ಪ್ರಾರಂಭಿಕ

**1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಜಗತ್ ವಿಶ್ವವಿದ್ಯಾಲಯ ಅಧಿನಿಯಮ, 2018 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. ಪರಿಭಾಷೆಗಳು.-** ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) "ಶೈಕ್ಷಣಿಕ ಪರಿಷತ್ತು (ಅಕೆಡೆಮಿಕ್ ಕೌನ್ಸಿಲ್)" ಎಂದರೆ, 25ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿಸಲಾದ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು;

(ಬಿ) "ಕಾರ್ಯಸೂಚಿ ವಿಷಯಗಳು", ಎಂದರೆ, ಪರಿನಿಯಮಗಳಲ್ಲಿ ಹೆಸರಿಸಬಹುದಾದ ಮತ್ತು ಒಂದು ಸಭೆಯಲ್ಲಿ ಆ ವಿಷಯಗಳನ್ನು ಮತ್ತು ಕಲಾಪಗಳನ್ನು ಅನುಮೋದಿಸಬಹುದೆಂದು ತಮ್ಮ ಸಮ್ಮತಿ ಸೂಚಿಸಿ ಕುಲಾಧಿಪತಿಯವರು ಮುಂಚಿತವಾಗಿಯೇ ಲಿಖಿತ ಅನುಮೋದನೆಯನ್ನು ಕೊಟ್ಟಿದ್ದಾಗ ಮಾತ್ರವೇ ಸಂದರ್ಭಾನುಸಾರ ಪ್ರಬಂಧಕರ ಮಂಡಳಿ ಅಥವಾ ವ್ಯವಸ್ಥಾಪನಾ ಮಂಡಳಿ ಅಥವಾ ಯಾವುದೇ ಸಮಿತಿಯವರು ಕಾರ್ಯಸೂಚಿಯಲ್ಲಿ ಸೇರಿಸಬಹುದಾದ ಅಥವಾ ಸಭೆಯಲ್ಲಿ ಚರ್ಚೆಗೆ ತೆಗೆದುಕೊಂಡು ನಿರ್ಣಯವನ್ನು ಕೊಡಬಹುದಾದ ಎಲ್ಲಾ ವಿಷಯಗಳು ಮತ್ತು ಕಲಾಪಗಳು;

(ಸಿ) "ಪ್ರಬಂಧಕರ ಮಂಡಳಿ" ಎಂದರೆ, 23ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಪ್ರಬಂಧಕರ ಮಂಡಳಿ;

(ಡಿ) "ವ್ಯವಸ್ಥಾಪನಾ ಮಂಡಳಿ" ಎಂದರೆ 24ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದಂತೆ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿ;

(ಇ) "ಕುಲಾಧಿಪತಿ", "ಕುಲಪತಿ", "ಸಹಕುಲಪತಿ" ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ ಮತ್ತು ಸಹಕುಲಪತಿ;

(ಎಫ್) "ಕ್ಯಾಂಪಸ್" ಎಂದರೆ, ಅದು ರಾಜ್ಯದೊಳಗೆ ಇರುವ ವಿಶ್ವವಿದ್ಯಾಲಯವು ಸ್ಥಾಪಿಸಿದ, ನಿರ್ವಹಿಸುವ ಒಂದು ಕ್ಯಾಂಪಸ್;

(ಜಿ) "ಸಮಿತಿಗಳು" ಎಂದರೆ, ಈ ಅಧಿನಿಯಮದಡಿಯಲ್ಲಿ ರೂಪಿಸಲಾದ ಸಮಿತಿಗಳು ಅಥವಾ ಸಂದರ್ಭಾನುಸಾರವಾಗಿ ವಿಶ್ವವಿದ್ಯಾಲಯದ ವಿವಿಧ ಕಾರ್ಯಕರ್ತರು ರಚಿಸಿರುವ ಸಮಿತಿಗಳು ಮತ್ತು ಅದರಲ್ಲಿ ಶೋಧನಾ ಸಮಿತಿ, ನಾಮನಿರ್ದೇಶನ ಸಮಿತಿ, ಹಣಕಾಸು ಸಮಿತಿ, ಹಣಕಾಸು ಪರಿಷತ್ತು ಮತ್ತು ಅಂಥ ಇತರ ಸಮಿತಿಗಳು ಒಳಗೊಳ್ಳುತ್ತವೆ;

(ಎಚ್) "ಘಟಕ ಕಾಲೇಜು" ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುತ್ತಿರುವ ಒಂದು ಕಾಲೇಜು ಅಥವಾ ಸಂಸ್ಥೆ;

(ಐ) "ಹಣಕಾಸು ಸಮಿತಿ" ಎಂದರೆ, 27ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಹಣಕಾಸು ಸಮಿತಿ;

(ಜೆ) "ಸರ್ಕಾರ" ಎಂದರೆ, ಕರ್ನಾಟಕ ಸರ್ಕಾರ;

(ಕೆ) "ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳು" ಎಂದರೆ, ವಿಶ್ವವಿದ್ಯಾಲಯ ಅನುದಾನ ಆಯೋಗ, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು, ರಾಷ್ಟ್ರೀಯ ಬೋಧಕ ಶಿಕ್ಷಣ ಪರಿಷತ್ತು, ಭಾರತೀಯ ವೈದ್ಯಕೀಯ ಪರಿಷತ್ತು, ಭಾರತೀಯ ಔಷಧ ವಿಜ್ಞಾನ ಪರಿಷತ್ತು, ರಾಷ್ಟ್ರೀಯ ಮೌಲ್ಯಮಾಪನ ಮತ್ತು ಅಧಿಮಾನ್ಯತಾ ಪರಿಷತ್ತು, ಭಾರತೀಯ ಕೃಷಿ ಸಂಶೋಧನಾ ಪರಿಷತ್ತು, ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಪರಿಷತ್ತು, ಇತ್ಯಾದಿ., ಮತ್ತು ಸರ್ಕಾರವನ್ನು ಒಳಗೊಂಡು ಉನ್ನತ ಶಿಕ್ಷಣದಲ್ಲಿ ಗುಣಮಟ್ಟದ ಶಿಕ್ಷಣ

ದೊರೆಯುವಂತೆ ನೋಡಿಕೊಳ್ಳುವುದಕ್ಕಾಗಿ ಗುಣಮಟ್ಟಗಳು ಮತ್ತು ಷರತ್ತುಗಳನ್ನು ವಿಧಿಸುವುದಕ್ಕಾಗಿ, ಕೇಂದ್ರ ಸರ್ಕಾರವು ಸ್ಥಾಪಿಸಿರುವ ಒಂದು ಸಂಸ್ಥೆ;

(ಎಲ್) "ನಿಯಮಿಸಲಾದುದು" ಎಂದರೆ, ಈ ಅಧಿನಿಯಮದಡಿಯಲ್ಲಿ ಸರ್ಕಾರವು ರಚಿಸಲಾದ ನಿಯಮಗಳ ಮೂಲಕ ನಿಯಮಿಸಲಾದುದು;

(ಎಂ) "ಒಂದು ಘಟಕ ಕಾಲೇಜಿಗೆ ಸಂಬಂಧಪಟ್ಟಂತೆ ಪ್ರಾಂಶುಪಾಲರು" ಎಂದರೆ, ಘಟಕ ಕಾಲೇಜಿನ ಮುಖ್ಯಸ್ಥರು ಮತ್ತು ಪ್ರಾಂಶುಪಾಲರು ಇಲ್ಲದಿದ್ದಲ್ಲಿ ಅಥವಾ ನೇಮಕವಾದ ಪ್ರಾಂಶುಪಾಲರ ಗೈರುಹಾಜರಿಯಲ್ಲಿ, ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ತಾತ್ಕಾಲಿಕವಾಗಿ ನೇಮಕಗೊಂಡಿರುವ ಉಪಪ್ರಾಂಶುಪಾಲರು ಅಥವಾ ಯಾವುದೇ ಇತರ ವ್ಯಕ್ತಿಯೂ ಇದರಲ್ಲಿ ಒಳಗೊಳ್ಳುತ್ತಾರೆ;

(ಎನ್) "ಕುಲಸಚಿವರು" ಎಂದರೆ, ವಿಶ್ವವಿದ್ಯಾಲಯದ ಕುಲಸಚಿವರು;

(ಒ) "ಪ್ರಾದೇಶಿಕ ಕೇಂದ್ರ" ಎಂದರೆ, ಯಾವುದೇ ಪ್ರದೇಶದಲ್ಲಿರುವ ಅಧ್ಯಯನ ಕೇಂದ್ರಗಳ ಕಾರ್ಯವನ್ನು ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ಮಾಡುವ ಉದ್ದೇಶಕ್ಕಾಗಿ ಮತ್ತು ಅಂಥ ಕೇಂದ್ರಕ್ಕೆ ವ್ಯವಸ್ಥಾಪನಾ ಮಂಡಲಿಯು ವಹಿಸಿಕೊಡಬಹುದಾದ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸುವುದಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಅಥವಾ ನಿರ್ವಹಿಸಿಕೊಂಡುಬರುವ ಒಂದು ಕೇಂದ್ರ;

(ಪಿ) ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ "ಪ್ರಾಯೋಜಕ ಪ್ರಾಧಿಕಾರ" ಅಥವಾ "ಪ್ರಾಯೋಜಕ ಸಂಸ್ಥೆ" ಎಂದರೆ ಪ್ರಾಯೋಜಕ ನ್ಯಾಸ ;

(ಕ್ಯೂ) "ಪ್ರಾಯೋಜಕ ನ್ಯಾಸ" ಎಂದರೆ, ಭಾರತೀಯ ನ್ಯಾಸ ಅಧಿನಿಯಮ, 1982ರ ಅಡಿಯಲ್ಲಿ ನೋಂದಾಯಿತವಾದ ಲಾರ್ಡ್ ಉಡುಪಿ ಕೃಷ್ಣ ಎಜುಕೇಷನಲ್ ಟ್ರಸ್ಟ್ (ರಿ.);

(ಆರ್) "ರಾಜ್ಯ" ಎಂದರೆ, ಕರ್ನಾಟಕ ರಾಜ್ಯ;

(ಎಸ್) "ಪರಿನಿಯಮಗಳು" ಮತ್ತು "ವಿನಿಯಮಗಳು" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಅನುಕ್ರಮವಾಗಿ ವಿಶ್ವವಿದ್ಯಾಲಯದ ಪರಿನಿಯಮಗಳು ಮತ್ತು ವಿನಿಯಮಗಳು;

(ಟಿ) "ಅಧ್ಯಯನ ಕೇಂದ್ರ" ಎಂದರೆ, ವಿದ್ಯಾರ್ಥಿಗಳಿಗೆ ಅಗತ್ಯವಾದ ಬುದ್ಧಿವಾದ, ಸಲಹೆಗಳನ್ನು ನೀಡುವ ಅಥವಾ ಇತರ ಯಾವುದೇ ನೆರವನ್ನು ನೀಡುವ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಮತ್ತು ನಿರ್ವಹಿಸಿಕೊಂಡುಬಂದ ಒಂದು ಕೇಂದ್ರ;

(ಯು) "ಅಧ್ಯಾಪಕರು" ಎಂದರೆ, ಒಬ್ಬ ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಒಂದು ಘಟಕ ಕಾಲೇಜಿನಲ್ಲಿ ಬೋಧಿಸುವುದಕ್ಕೆ ಅಥವಾ ಸಂಶೋಧನೆ ನಡೆಸುವುದಕ್ಕೆ ಅಥವಾ ಸಂಶೋಧನೆಗೆ ಮಾರ್ಗದರ್ಶನ ನೀಡುವುದಕ್ಕೆ ನೇಮಕವಾದ ಅಂಥ ಇತರ ವ್ಯಕ್ತಿ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗವು ನಿರ್ದಿಷ್ಟಪಡಿಸಿದ ಗುಣಮಟ್ಟಗಳಿಗೆ ಅನುಸಾರವಾಗಿ ಇರುವ ಘಟಕ ಕಾಲೇಜಿನ ಪ್ರಾಂಶುಪಾಲರು ಇದರಲ್ಲಿ ಒಳಗೊಳ್ಳುತ್ತಾರೆ;

(ವಿ) "ನ್ಯಾಸ" ಎಂದರೆ, ಭಾರತೀಯ ನ್ಯಾಸ ಅಧಿನಿಯಮ, 1982ರ ಅಡಿಯಲ್ಲಿ ನೋಂದಾಯಿತವಾದ ನ ಲಾರ್ಡ್ ಉಡುಪಿ ಕೃಷ್ಣ ಎಜುಕೇಷನಲ್ ಟ್ರಸ್ಟ್ (ರಿ.);

(ಡಬ್ಲ್ಯೂ) "ವಿಶ್ವವಿದ್ಯಾಲಯ" ಎಂದರೆ, ಈ ಅಧಿನಿಯಮದಡಿಯಲ್ಲಿ ಸ್ಥಾಪಿಸಿ ನಿಗಮಿತಗೊಳಿಸಲಾದ ಜಗತ್ ವಿಶ್ವವಿದ್ಯಾಲಯ;

(ಎಕ್ಸ್) "ವಿಶ್ವವಿದ್ಯಾಲಯ ಅನುದಾನಗಳ ಆಯೋಗ" ಎಂದರೆ ವಿಶ್ವವಿದ್ಯಾಲಯ ಅನುದಾನಗಳ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) 4ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ಆಯೋಗ;

(ವೈ) "ಸಂದರ್ಶಕರು" ಎಂದರೆ, 13ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ವಿಶ್ವವಿದ್ಯಾಲಯದ ಸಂದರ್ಶಕರು.

## ಅಧ್ಯಾಯ– II

## ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

3. **ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ.–** (1) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಹಕ್ಕನ್ನು ಪ್ರಾಯೋಜಕ ನ್ಯಾಸವು ಹೊಂದಿರತಕ್ಕದ್ದು.

(2) ಪ್ರಾಯೋಜಕ ನ್ಯಾಸವು ರಾಜ್ಯ ಸರ್ಕಾರಕ್ಕೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವವನ್ನು ಸಲ್ಲಿಸತಕ್ಕದ್ದು.

(3) ಪ್ರಸ್ತಾವವು ಈ ಮುಂದಿನ ವಿವರಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಪ್ರಾಯೋಜಿತ ನ್ಯಾಸದ ವಿವರಗಳೊಂದಿಗೆ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು;

(ii) ವಿಶ್ವವಿದ್ಯಾಲಯದ ವ್ಯಾಪ್ತಿ ಮತ್ತು ಸ್ಥಾನಮಾನ ಹಾಗೂ ಭೂಮಿಯ ಲಭ್ಯತೆ;

(iii) ಪ್ರಾರಂಭದ ದಿನಾಂಕದಿಂದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳಬೇಕೆಂದಿರುವ ಅಧ್ಯಯನ ಮತ್ತು ಸಂಶೋಧನಾ ಕಾರ್ಯಕ್ರಮಗಳ ಸ್ವರೂಪ ಮತ್ತು ಬಗೆಗಳು;

(iv) ಪ್ರಾರಂಭಿಸಬೇಕೆಂದು ಪ್ರಸ್ತಾಪಿಸಿರುವ ವ್ಯಾಸಂಗ ವಿಭಾಗಗಳು (ಫ್ಯಾಕಲ್ಟಿಗಳು), ಅಧ್ಯಯನ ಕ್ರಮಗಳು ಮತ್ತು ಸಂಶೋಧನೆಗಳ ಸ್ವರೂಪ;

(v) ಕಟ್ಟಡಗಳು, ಸಲಕರಣೆಗಳು ಮತ್ತು ರಚನಾ ಸೌಕರ್ಯಗಳನ್ನು ಒದಗಿಸುವಂಥ ಕ್ಯಾಂಪಸ್ ಅಭಿವೃದ್ಧಿ;

(vi) ಪ್ರಾರಂಭದ ದಿನಾಂಕದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಗಾಗಿ ಬಂಡವಾಳ ವೆಚ್ಚದ ಹಂತಗಳು;

(vii) ಬಾಬುವಾರು ಆವರ್ತಕ ವೆಚ್ಚ, ಆರ್ಥಿಕ ಮೂಲಗಳು ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ತಗಲುವ ಅಂದಾಜು ವೆಚ್ಚ;

(viii) ಸಂಪನ್ಮೂಲ ಸಂಗ್ರಹಣೆಗಾಗಿ ಯೋಜನೆ ಮತ್ತು ಅದಕ್ಕೆ ಬಂಡವಾಳದಿಂದ ತಗಲುವ ವೆಚ್ಚ ಹಾಗೂ ಪ್ರತಿಯೊಂದು ಮೂಲಕ್ಕೂ ಮರು ಸಂದಾಯ ಮಾಡುವ ರೀತಿ;

(ix) ವಿದ್ಯಾರ್ಥಿಗಳಿಂದ ಶುಲ್ಕ ವಸೂಲು ಮಾಡಿ ಆಂತರಿಕವಾಗಿ ನಿಧಿ ಸಂಗ್ರಹಿಸುವ ಯೋಜನೆ, ಸಲಹಾ ಸೇವೆ ಮತ್ತು ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಿಗೆ ಸಂಬಂಧಿಸಿದ ಇತರ ಚಟುವಟಿಕೆಗಳಿಂದ ನಿರೀಕ್ಷಿತ ವರಮಾನಗಳು ಮತ್ತು ಇತರ ನಿರೀಕ್ಷಿತ ವರಮಾನಗಳು;

(x) ಘಟಕವೊಂದಕ್ಕೆ ತಗಲುವ ವೆಚ್ಚದ ವಿವರಗಳು, ಆರ್ಥಿಕವಾಗಿ ದುರ್ಬಲವಾದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕ, ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿ ವೇತನದಲ್ಲಿ ನೀಡುವ ರಿಯಾಯಿತಿ ಅಥವಾ ವಿನಾಯತಿಯ ಪರಿಮಿತಿಯ ವಿವರಗಳನ್ನು ಮತ್ತು ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳಿಗೆ ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳು ಪ್ರಾಯೋಜಿಸಿದ ವಿದ್ಯಾರ್ಥಿಗಳಿಗೆ ಮತ್ತು ಭಾರತವನ್ನುಳಿದು ಇತರ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ವಿಧಿಸತಕ್ಕ ಶುಲ್ಕದ ದರಗಳು ಬೇರೆ ಬೇರೆ ಇದ್ದಲ್ಲಿ ಅವುಗಳನ್ನು ಸೂಚಿಸುವ ಶುಲ್ಕ ರಚನೆಯ ವಿವರಗಳು;

(xi) ಸಂಬಂಧಪಟ್ಟ ವಿದ್ಯಾ ವಿಭಾಗದಲ್ಲಿ ಪ್ರಾಯೋಜಕ ನ್ಯಾಸವು ದೊರಕಿಸಿಕೊಡಲಿರುವ ವರ್ಷಗಳ ಅನುಭವ ಮತ್ತು ಪರಿಣಿತಿ ಹಾಗೂ ಅದರ ಹಣಕಾಸಿನ ಸಂಪನ್ಮೂಲಗಳು;

(xii) ವಿಶ್ವವಿದ್ಯಾಲಯದಲ್ಲಿರುವ ಅಧ್ಯಯನ ಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕಾಗಿ ಇರುವ ವ್ಯವಸ್ಥೆ;

(xiii) ವಿಶ್ವವಿದ್ಯಾಲಯವು ಸ್ಥಾಪನೆಯಾಗುವುದಕ್ಕೆ ಮೊದಲು ನೆರವೇರಿಸಬೇಕೆಂದು ರಾಜ್ಯ ಸರ್ಕಾರವು ಅಗತ್ಯಪಡಿಸಬಹುದಾದ ಅಂಥ ಇತರ ಷರತ್ತುಗಳ ನೆರವೇರಿಕೆಯ ಹಂತ.

(4) ಪ್ರಾಯೋಜಕ ನ್ಯಾಸದಿಂದ ಸ್ವೀಕರಿಸಿದ ಪ್ರಸ್ತಾವಗಳನ್ನು ಪರೀಕ್ಷಿಸಲು ರಾಜ್ಯ ಸರ್ಕಾರವು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಪದನಿಮಿತ್ತ ಸದಸ್ಯರಾದ ಮೂರು ಸದಸ್ಯರುಗಳನ್ನು ಒಳಗೊಂಡ ಒಂದು ಶೋಧನಾ ಸಮಿತಿಯನ್ನು ರಚಿಸತಕ್ಕದ್ದು ಮತ್ತು ಅದು ವಿಶ್ವವಿದ್ಯಾಲಯದ ಸ್ಥಾಪನೆಗೆ ರಾಜ್ಯ ಸರ್ಕಾರಕ್ಕೆ ಶಿಫಾರಸ್ಸನ್ನು ಮಾಡತಕ್ಕದ್ದು.

**4. ವಿಶ್ವವಿದ್ಯಾಲಯದ ಸ್ಥಾಪನೆ.–** (1) ರಾಜ್ಯ ಸರ್ಕಾರವು ಶೋಧನಾ ಸಮಿತಿಯು ಮಾಡಿದ ಶಿಫಾರಸ್ಸುಗಳನ್ನು ಪರಿಶೀಲಿಸಿದ ತರುವಾಯ ಮತ್ತು ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ,-

(i) ನ್ಯಾಸವು ಸಾಕಷ್ಟು ಮೂಲ ಸೌಕರ್ಯದೊಂದಿಗೆ ವಿಶ್ವವಿದ್ಯಾಲಯವೊಂದನ್ನು ನಡೆಸಲು ಸಮರ್ಥವಾಗಿದೆ ಎಂದು ಅದು ಮನಗಂಡರೆ;

(ii) ಪ್ರದೇಶಕ್ಕನುಸಾರವಾಗಿ ಕೆಳಗೆ ನಿರ್ದಿಷ್ಟ ಪಡಿಸಿದ ವ್ಯಾಪ್ತಿಗೆ ಭೂಮಿಯ ಒಡೆತನವನ್ನು ಹೊಂದಿರತಕ್ಕದ್ದು, ಎಂದರೆ:-

(ಎ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯೊಳಗಿದ್ದರೆ ಇಪ್ಪತ್ತೈದು ಎಕರೆಗಳು;

(ಬಿ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯಿಂದ ಹೊರಗೆ ಇದ್ದು, ಆದರೆ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಪ್ರದೇಶದ ಒಳಗೆ ಇದ್ದರೆ ನಲವತ್ತು ಎಕರೆಗಳು;

(ಸಿ) ಭೂಮಿಯು (ಎ) ಮತ್ತು (ಬಿ) ಖಂಡಗಳಲ್ಲಿ ನಿರ್ದಿಷ್ಟಪಡಿಸಿದ ಸ್ಥಳಗಳನ್ನು ಹೊರತುಪಡಿಸಿದ್ದರೆ ಅರವತ್ತು ಎಕರೆಗಳಿಗಿಂತ ಕಡಿಮೆ ಇರತಕ್ಕದ್ದಲ್ಲ.

ಮೇಲೆ ನಿರ್ದಿಷ್ಟಪಡಿಸಿದ ಭೂಮಿಯು ಏಕ ಘಟಕ (ಸಿಂಗಲ್ ಬ್ಲಾಕ್) ದಲ್ಲಿರತಕ್ಕದ್ದು ಮತ್ತು ಇದು ಸಂಬಂಧಪಟ್ಟ ನ್ಯಾಸ ಅಥವಾ ಸಂಸ್ಥೆ ಅಥವಾ ವಿಶ್ವವಿದ್ಯಾಲಯದ ಹೆಸರಿನಲ್ಲಿರತಕ್ಕದ್ದು. 3ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ಅಗತ್ಯಪಡಿಸಲಾದಂತೆ ಒದಗಿಸಿದ ವಿವರಗಳ ಆಧಾರದ ಮೇಲೆ ಸರ್ಕಾರವು 47ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಬೇಕೆಂದು ನ್ಯಾಸಕ್ಕೆ ನಿರ್ದೇಶನ ನೀಡಬಹುದು.

(2) ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಸ್ಥಾಪನೆಯ ತರುವಾಯ, ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, "ಜಗತ್ ವಿಶ್ವವಿದ್ಯಾಲಯ" ಎಂಬ ಹೆಸರಿನ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ರಾಜ್ಯದಲ್ಲಿ ಸ್ಥಾಪಿಸುವುದಕ್ಕೆ ಮಂಜೂರಾತಿಯನ್ನು ನೀಡಬಹುದು.

(3) ವಿಶ್ವವಿದ್ಯಾಲಯದ ಕೇಂದ್ರ ಕಾರ್ಯಸ್ಥಾನವು ಬೆಂಗಳೂರಿನಲ್ಲಿ ಇರತಕ್ಕದ್ದು. ವಿಶ್ವವಿದ್ಯಾಲಯವು ತನ್ನ ಕ್ಯಾಂಪಸ್ಸುಗಳನ್ನು ಅಥವಾ ಪ್ರಾದೇಶಿಕ ಕೇಂದ್ರಗಳನ್ನು, ಅಧ್ಯಯನ ಕೇಂದ್ರಗಳನ್ನು ಕರ್ನಾಟಕದ ಯಾವುದೇ ಭಾಗದಲ್ಲಿ ಹೊಂದಿರತಕ್ಕದ್ದು ಮತ್ತು ಆ ಬಗ್ಗೆ ರಾಜ್ಯ ಸರ್ಕಾರದ ಪೂರ್ವಾನುಮತಿಯನ್ನು ಪಡೆದುಕೊಳ್ಳುವುದಕ್ಕೊಳಪಟ್ಟು ಹಾಗೂ ವಿಶ್ವವಿದ್ಯಾಲಯ ಅನುದಾನಗಳ ಆಯೋಗದ ಗುಣಮಟ್ಟಗಳಿಗನುಸಾರವಾಗಿ ಹೊಂದಿರತಕ್ಕದ್ದು.

(4) ಮೊದಲ ಕುಲಾಧಿಪತಿಯವರು, ಮೊದಲ ಕುಲಪತಿಯವರು, ಪ್ರಬಂಧಕ ಮಂಡಳಿಯ ಮೊದಲ ಸದಸ್ಯರುಗಳು, ವ್ಯವಸ್ಥಾಪನಾ ಮಂಡಳಿಯ ಹಾಗೂ ಶೈಕ್ಷಣಿಕ ಪರಿಷತ್ತಿನ ಮೊದಲ ಸದಸ್ಯರುಗಳು ಮತ್ತು ಇನ್ನು ಮುಂದೆ, ಅಂಥ ಅಧಿಕಾರಿಗಳು ಅಥವಾ ಸದಸ್ಯರುಗಳಾಗಬಹುದಾದಂಥ ಎಲ್ಲಾ ವ್ಯಕ್ತಿಗಳು, ಅಂಥ ಪದ ಅಥವಾ ಸದಸ್ಯತ್ವವನ್ನು ಹೊಂದಿರುವುದು ಮುಂದುವರೆಯುವವರೆಗೆ, ಒಂದು ನಿಗಮಿತ ನಿಕಾಯವನ್ನು ರಚಿಸತಕ್ಕದ್ದು. ಮತ್ತು ಅದು ವಿಶ್ವವಿದ್ಯಾಲಯದ ಹೆಸರಿನಲ್ಲಿ ದಾವೆ ಹೂಡಬಹುದು ಮತ್ತು ದಾವೆಗೊಳಗಾಗಬಹುದು.

(5) (2)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯವು ಸ್ಥಾಪನೆಗೆ ಮಂಜೂರಾತಿಯಾದ ಮೇಲೆ, ವಿಶ್ವವಿದ್ಯಾಲಯದ ಉದ್ದೇಶಕ್ಕಾಗಿ, ನ್ಯಾಸವು ಆರ್ಜಿಸಿದ, ಸೃಜಿಸಿದ, ಏರ್ಪಾಟು ಮಾಡಿಕೊಂಡ ಅಥವಾ ಕಟ್ಟಲ್ಪಟ್ಟ ಭೂಮಿ ಮತ್ತು ಇತರ ಸ್ಥಿರ ಮತ್ತು ಚರ ಸ್ವತ್ತು, ವಿಶ್ವವಿದ್ಯಾಲಯದಲ್ಲಿ ನಿಹಿತವಾಗಿರತಕ್ಕದ್ದು.

(6) ವಿಶ್ವವಿದ್ಯಾಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದ ಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನ ಮಾಡತಕ್ಕದ್ದು ಮತ್ತು ಅಂಥ ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

(7) ವಿಶ್ವವಿದ್ಯಾಲಯದಲ್ಲಿನ ಭೂಮಿ, ಕಟ್ಟಡ ಮತ್ತು ಇತರ ಸ್ವತ್ತುಗಳನ್ನು, ವಿಶ್ವವಿದ್ಯಾಲಯದ ಉದ್ದೇಶಗಳಿಗೆ ಆನುಷಂಗಿಕವಾಗಿರುವುದನ್ನು ಹೊರತುಪಡಿಸಿ ಇತರ ಯಾವುದೇ ಉದ್ದೇಶಕ್ಕಾಗಿ ಬಳಸತಕ್ಕದ್ದಲ್ಲ.

**5. ಅನುದಾನಗಳು ಮತ್ತು ಹಣಕಾಸು ನೆರವು.–** ವಿಶ್ವವಿದ್ಯಾಲಯವು ಸ್ವಂತ ಧನಮೂಲವುಳ್ಳ ಲಾಭರಹಿತ ಸಂಸ್ಥೆಯಾಗಿರತಕ್ಕದ್ದು ರಾಜ್ಯದಿಂದ ಅಥವಾ ರಾಜ್ಯದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಇತರ

ಸಂಸ್ಥೆ ಅಥವಾ ನಿಗಮದಿಂದ ಯಾವುದೇ ನಿರ್ವಹಣಾ ಸಹಾಯ ಅನುದಾನ ಅಥವಾ ಯಾವುದೇ ಹಣಕಾಸು ನೆರವನ್ನು ಹಕ್ಕಿನಿಂದ ಕೇಳತಕ್ಕದ್ದಲ್ಲ ಅಥವಾ ಅದನ್ನು ಪಡೆಯಲು ಹಕ್ಕನ್ನು ಹೊಂದಿರತಕ್ಕದ್ದಲ್ಲ:

ಪರಂತು, ರಾಜ್ಯವು,-

(ಎ) ಇತರ ರಾಜ್ಯ ಸರ್ಕಾರದ ಸಂಘಟನೆಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿರುವಂಥದ್ದೇ ಸಂಶೋಧನೆ, ಅಭಿವೃದ್ಧಿ ಮತ್ತಿತರ ಚಟುವಟಿಕೆಗಳಿಗಾಗಿ; ಅಥವಾ

(ಬಿ) ರಾಜ್ಯ ಸರ್ಕಾರದಿಂದ ನೆರವನ್ನು ಪಡೆಯುವ ಯಾವುದೇ ನಿರ್ದಿಷ್ಟ ಸಂಶೋಧನೆ ಅಥವಾ ಕಾರ್ಯಕ್ರಮಗಳಿಗಾಗಿ; ಮತ್ತು

(ಸಿ) ರಾಜ್ಯ ಕಾರ್ಯನೀತಿಯ ಬದಲಾವಣೆಗೆ ಒಳಪಟ್ಟು ಅಥವಾ ಅನ್ಯಥಾ ಇದೇ ಬಗೆಯ ವಿಶ್ವವಿದ್ಯಾಲಯಗಳಿಗೆ ಅವಕಾಶವನ್ನು ಕಲ್ಪಿಸುವುದಕ್ಕೆ ಅಥವಾ ಅವುಗಳ ಪ್ರಯೋಜನಕ್ಕಾಗಿ,

– ಅನುದಾನದ ಮೂಲಕ ಅಥವಾ ಅನ್ಯಥಾ ಹಣಕಾಸು ಬೆಂಬಲವನ್ನು ಒದಗಿಸಬಹುದು:

ಮತ್ತು ಪರಂತು, ವಿಶ್ವವಿದ್ಯಾಲಯವು, ಯಾವುದೇ ಇತರ ಮೂಲದಿಂದ ಯಾವುದೇ ಆರ್ಥಿಕ ನೆರವನ್ನು ಸ್ವೀಕರಿಸಬಹುದು.

**6. ಘಟಕ ಕಾಲೇಜು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಅಥವಾ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದಕ್ಕೆ ಅಧಿಕಾರ.–** ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಐದು ವರ್ಷಗಳನ್ನು ಪೂರ್ಣಗೊಳಿಸಿದ ನಂತರ, ವಿಶ್ವವಿದ್ಯಾಲಯ ಅನುದಾನ ಆಯೋಗದ ಮತ್ತು ಇತರ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ಗುಣಮಟ್ಟಗಳಿಗೆ ಒಳಪಟ್ಟು, ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ, ವಿಶ್ವವಿದ್ಯಾಲಯವು, ರಾಜ್ಯದಲ್ಲಿ ತನಗೆ ಸೂಕ್ತವೆನಿಸುವಂಥ ಸ್ಥಳಗಳಲ್ಲಿ ಘಟಕ ಕಾಲೇಜುಗಳು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದಿರಬಹುದು.

**7. ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು.–** ವಿಶ್ವವಿದ್ಯಾಲಯವು, ತನ್ನ ಭವಿಷ್ಯದ್‌ದೃಷ್ಟಿ ಮತ್ತು ಧ್ಯೇಯೋದ್ದೇಶಗಳನ್ನು ಸಾಧಿಸಲು ಈ ಮುಂದಿನಂತೆ ವಿವಿಧ ಬಗೆಯ ಕಾರ್ಯತಂತ್ರಗಳನ್ನು ಕೈಗೊಳ್ಳಬಹುದು:-

(i) ತಾಂತ್ರಿಕ, ಆರೋಗ್ಯ ವ್ಯವಸ್ಥಾಪನೆ, ಜೀವ ವಿಜ್ಞಾನಗಳು ಮತ್ತು ಸಂಬಂಧಿತ ವಲಯಗಳಲ್ಲಿ ಸ್ನಾತಕೋತ್ತರ, ಡಾಕ್ಟೊರಲ್ ಮತ್ತು ಪೋಸ್ಟ್ ಡಾಕ್ಟೊರಲ್ ಕೋರ್ಸುಗಳಿಗೆ ಮುಂದುವರಿಯುವ ಮತ್ತು ಅವುಗಳನ್ನು ಒಳಗೊಳ್ಳುವ ವಿಶ್ವವಿದ್ಯಾಲಯ ಶಿಕ್ಷಣದಲ್ಲಿ ಪ್ರಗತಿಯನ್ನು ಮತ್ತು ಅನ್ವೇಷಣೆಯನ್ನು ಬೆಂಬಲಿಸುವುದು, ಪ್ರೋತ್ಸಾಹಿಸುವುದು ಮತ್ತು ಕೈಗೊಳ್ಳುವುದು ಹಾಗೂ ಈ ಕ್ಷೇತ್ರಗಳಲ್ಲಿ ಸಲಹೆಯನ್ನೂ ಒಳಗೊಂಡಂತೆ ಸಂಶೋಧನೆ, ಪ್ರಗತಿ ಮತ್ತು ಜ್ಞಾನ ಪ್ರಸಾರಕ್ಕೆ ಉಪಬಂಧಗಳನ್ನು ಕಲ್ಪಿಸುವುದು;

(ii) ವಿದ್ಯಾರ್ಥಿಗಳಿಗೆ, ಬೋಧಕ ವೃಂದದ (ಫ್ಯಾಕಲ್ಟಿ) ಸದಸ್ಯರಿಗೆ ಮತ್ತು ಇತರರಿಗೆ ನಿರ್ದಿಷ್ಟ ಶೈಕ್ಷಣಿಕ ಮತ್ತು ಸಂಶೋಧನಾ ಕಾರ್ಯಕ್ರಮಗಳನ್ನು, ಉನ್ನತ ಗುಣಮಟ್ಟದ ತರಬೇತಿ ಕಾರ್ಯಕ್ರಮಗಳನ್ನು ಮತ್ತು ವಿನಿಮಯ ಕಾರ್ಯಕ್ರಮಗಳನ್ನು ಪರಿಕಲ್ಪಿಸಲು, ವಿನ್ಯಾಸಗೊಳಿಸಲು, ಅಭಿವೃದ್ಧಿಪಡಿಸಲು ಇತರ ಯಾವುದೇ ವಿಶ್ವವಿದ್ಯಾಲಯಗಳು, ಸಂಶೋಧನಾ ಸಂಸ್ಥೆಗಳು, ಲಾಭರಹಿತ ಸಂಸ್ಥೆಗಳು, ಕೈಗಾರಿಕಾ ಸಂಸ್ಥೆಗಳು, ವೃತ್ತಿಪರ ಸಂಸ್ಥೆಗಳು ಅಥವಾ ಇತರ ಸಂಸ್ಥೆಗಳೊಂದಿಗೆ ಸಹಯೋಗವನ್ನು ಹೊಂದುವುದು;

(iii) ರಾಜ್ಯ ಸರ್ಕಾರದ ಪೂರ್ವ ಅನುಮೋದನೆಯೊಡನೆ, ಯಾವುದೇ ಸಂಸ್ಥೆಯೊಂದಿಗೆ ಸಹಯೋಗ ಹೊಂದಿ ಸಂಶೋಧನೆಯನ್ನು ಮತ್ತು ಹೊಸತನವನ್ನು ಬೆಳಕಿಗೆ ತರುವುದು;

(iv) ತಾನು ಸೂಕ್ತವೆಂದು ಭಾವಿಸಬಹುದಾದಂತೆ, ಕಲಿಕೆಯ ಅಂಥ ಶಾಖೆಗಳಲ್ಲಿ ಬೋಧನಾ ಮತ್ತು ಸಂಶೋಧನಾ ಸೌಲಭ್ಯಗಳನ್ನು ಒದಗಿಸಿ ಜ್ಞಾನ ಪ್ರಸಾರ ಮಾಡುವುದು ಮತ್ತು ಅದನ್ನು ಮುಂದುವರೆಸುವುದು ಹಾಗೂ ವಿಶೇಷವಾಗಿ ಪ್ರಸ್ತಾವಿತ ಕ್ಷೇತ್ರಗಳಾದ ತಾಂತ್ರಿಕ, ಆರೋಗ್ಯ ವ್ಯವಸ್ಥಾಪನೆ, ಜೀವ ವಿಜ್ಞಾನ ಕೋರ್ಸುಗಳಲ್ಲಿ ಸಮಗ್ರ ವ್ಯಾಸಂಗ ವಿಷಯಗಳಿಗಾಗಿ ವಿಶೇಷ ಉಪಬಂಧ ಕಲ್ಪಿಸುವುದು ಮತ್ತು ವಿಶ್ವವಿದ್ಯಾಲಯದ ಅಂಥ ಇತರ ಉನ್ನತ ಶೈಕ್ಷಣಿಕ ಕಾರ್ಯಕ್ರಮಗಳಿಗಾಗಿ ಅಂತರವಿದ್ಯಾವಿಷಯಗಳ ಅಧ್ಯಯನ ಮತ್ತು ಸಂಶೋಧನೆಗೆ ಉತ್ತೇಜನ ನೀಡುವುದಕ್ಕೆ ಸೂಕ್ತ ಕ್ರಮ ಕೈಗೊಳ್ಳುವುದು;

(v) ಆಹಾರ ಪೂರೈಕೆ ಕ್ಷೇತ್ರದಿಂದ ತಾಂತ್ರಿಕ ಪರಿಹಾರಗಳವರೆಗೆ ಭವಿಷ್ಯದ ಸುಸ್ಥಿರ ತಂತ್ರಜ್ಞಾನಗಳ ಮೇಲಿನ ಸಂಶೋಧನೆಯೊಂದಿಗೆ ಉನ್ನತ ಮಟ್ಟದ ತಾಂತ್ರಿಕ ಮತ್ತು ವೃತ್ತಿಪರ ಉದ್ದಿಮೆಗಳ ಬೇಡಿಕೆಗಳನ್ನು

ಈಡೇರಿಸಲು ಮಾನವ ಸಂಪನ್ಮೂಲ ಕೇಂದ್ರಗಳನ್ನು ಅಭಿವೃದ್ಧಿಗೊಳಿಸುವುದು ಹಾಗೂ ತಂತ್ರಜ್ಞಾನ ವ್ಯವಹಾರ ಮತ್ತು ತಂತ್ರಜ್ಞಾನ ಪರಿಪಕ್ವತೆಯನ್ನು ಬೆಂಬಲಿಸುವುದು;

(vi) ಉನ್ನತ ಕಲಿಕೆಗೆ ಪ್ರವೇಶಾವಕಾಶಗಳನ್ನು ಮತ್ತು ನ್ಯಾಯಸಮ್ಮತತೆಗೆ ಉತ್ತೇಜನ ನೀಡುವ ದೃಷ್ಟಿಯಿಂದ, ಕಲಿಕೆಯ ವಿಧಾನಗಳು ಮತ್ತು ಸ್ಥಳಗಳು, ವ್ಯಾಸಂಗ ಕ್ರಮಗಳ ಸಂಯೋಜನೆ, ದಾಖಲಾತಿಗಾಗಿ ಅರ್ಹತೆ, ಪ್ರವೇಶದ ವಯಸ್ಸು, ಪರೀಕ್ಷೆಯನ್ನು ನಡೆಸುವುದು ಮತ್ತು ಕಾರ್ಯಕ್ರಮಗಳ ನಿರ್ವಹಣೆಗೆ ಸಂಬಂಧಿಸಿದಂತೆ ನಮ್ಯವಾದ (ಫ್ಲೆಕ್ಸಿಬಲ್) ಮತ್ತು ಮುಕ್ತವಾದ, ವಿಶ್ವವಿದ್ಯಾಲಯ ಮಟ್ಟದ ಶಿಕ್ಷಣದ ಅನ್ವೇಷಣಾ ಪದ್ಧತಿಯನ್ನು ಅಳವಡಿಸುವುದು ಹಾಗೂ ಜ್ಞಾನದ ಹೊಸ ಕ್ಷೇತ್ರಗಳಲ್ಲಿ ಉತ್ಕೃಷ್ಟತೆಗೆ ಪ್ರೋತ್ಸಾಹಿಸುವುದು, ಶೈಕ್ಷಣಿಕ ಮತ್ತು ಸಮನ್ವಯ ಕಲಿಕೆ, ಇವೆರೆಡಕ್ಕೂ ಸಮನಾದ ಪ್ರಾಮುಖ್ಯತೆಯನ್ನು ನೀಡುವುದು;

(vii) ವಿಶ್ವವಿದ್ಯಾಲಯ ಅನುದಾನ ಆಯೋಗದ ಗುಣಮಟ್ಟಗಳನ್ವಯ ಮಾನವ ಅಭಿವೃದ್ಧಿಯನ್ನು ಅಭಿವೃದ್ಧಿಗೊಳಿಸುವುದು, ಗುಣಮಟ್ಟದ ಶಿಕ್ಷಣಕ್ಕಾಗಿ ಕೊಡುಗೆಯನ್ನು ನೀಡಲು ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಸಂಪನ್ಮೂಲ ಕೇಂದ್ರಗಳನ್ನು ಅಭಿವೃದ್ಧಿಪಡಿಸುವುದು;

(viii) ಕರ್ನಾಟಕದಲ್ಲಿ ವಿವಿಧ ಸ್ಥಳಗಳಲ್ಲಿ ಕ್ಯಾಂಪಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳು ಮತ್ತು ಘಟಕ ಕಾಲೇಜುಗಳನ್ನು ಸ್ಥಾಪಿಸುವುದು ಮತ್ತು ತಾಂತ್ರಿಕತೆ, ವೃತ್ತಿಪರತೆ, ಸಾಮಾನ್ಯ ಶಿಕ್ಷಣ ಮತ್ತು ಸಮಾಜ ಮತ್ತು ಮಾನವ ಅಭಿವೃದ್ಧಿಯಲ್ಲಿ ಶೈಕ್ಷಣಿಕ ಬದಲಾವಣೆಗೆ ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಕೊಡುಗೆ ನೀಡುವುದು ಮತ್ತು ಜ್ಞಾನವನ್ನು ಅಭಿವೃದ್ಧಿಪಡಿಸುವುದು;

(ix) ಮೌಲ್ಯಮಾಪನದ ವಿವಿಧ ಆಧುನಿಕ ವಿಧಾನಗಳ ಮೂಲಕ ಮಾಡಿದ ಮೌಲ್ಯಮಾಪನಕ್ಕೆ ಅನುಸಾರವಾಗಿ ಶಿಕ್ಷಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದುದರ ಆಧಾರದ ಮೇಲೆ ನೀಡಲು ಪದವಿಗಳನ್ನು, ಡಿಪ್ಲೋಮೋಗಳನ್ನು, ಪ್ರಮಾಣಪತ್ರಗಳನ್ನು ಮತ್ತು ಯಶೋಪತ್ರ ಪ್ರದಾನದಂಥ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(x) ಉಪನ್ಯಾಸ ಮಾಲಿಕೆಗಳು, ವಿಚಾರ ಸಂಕಿರಣಗಳು, ಸಮ್ಮೇಳನಗಳು, ಕಾರ್ಯಾಗಾರ, ಶಿಕ್ಷಣ ಕಾರ್ಯಕ್ರಮಗಳು, ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳು, ಪ್ರಕಟಣೆಗಳು ಮತ್ತು ತರಬೇತಿ ಕಾರ್ಯಕ್ರಮಗಳು ಮತ್ತು ಕಾರ್ಯಸೂಚಿಗಳ ಮೂಲಕ ಜ್ಞಾನ ಪ್ರಸಾರ ಮಾಡುವುದು ಮತ್ತು ಶಿಕ್ಷಣ ಮತ್ತು ತತ್ಸಂಬಂಧಿತ ಅಭಿವೃದ್ಧಿ ಕ್ಷೇತ್ರಗಳ ವಿಷಯಗಳ ಬಗ್ಗೆ ಸಾರ್ವಜನಿಕ ಚರ್ಚೆಯನ್ನು ಏರ್ಪಡಿಸುವುದು;

(xi) ರಾಜ್ಯ ಸರ್ಕಾರದ ಪೂರ್ವ ಅನುಮತಿಯೊಂದಿಗೆ, ಉತ್ತಮ ಗುಣಮಟ್ಟದ ಇತರ ಯಾವುವೇ ವಿಶ್ವವಿದ್ಯಾಲಯಗಳೊಂದಿಗೆ ಸಹಭಾಗಿಗಳಾಗಿ ವಿಶ್ವವಿದ್ಯಾಲಯದ ಬೋಧಕ ವೃಂದ (ಫ್ಯಾಕಲ್ಟಿ) ಮತ್ತು ಸಂಶೋಧಕರ ಅಭಿವೃದ್ಧಿ ಮತ್ತು ತರಬೇತಿಗಾಗಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು;

(xii) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದಕ್ಕಾಗಿ ಮತ್ತು ಉತ್ತೇಜಿಸುವುದಕ್ಕಾಗಿ ಅವಶ್ಯಕವಾದ ಮತ್ತು ಯುಕ್ತವಾದ ಕ್ರಮಗಳನ್ನು ಕೈಗೊಳ್ಳುವುದು;

(xiii) ಭಾರತದಲ್ಲಿ ಶಿಕ್ಷಣ ಮತ್ತು ಇತರ ಅಭಿವೃದ್ಧಿ ವಲಯಗಳನ್ನು ವಿಸ್ತರಿಸುವುದಕ್ಕಾಗಿ ಸರ್ಕಾರವು ಅನುಮೋದಿಸಬಹುದಾದಂತೆ ಯಾವುವೇ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದು.

**8. ವಿಶ್ವವಿದ್ಯಾಲಯದ ಅಧಿಕಾರಗಳು.**- ವಿಶ್ವವಿದ್ಯಾಲಯವು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗೆ ಅನುಸಾರವಾಗಿ ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿರ್ಧರಿಸಬಹುದಾದಂತೆ ಕ್ಯಾಂಪಸ್ಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಕರ್ನಾಟಕದಲ್ಲಿ ಸ್ಥಾಪಿಸುವುದು ಮತ್ತು ನಿರ್ವಹಿಸುವುದು;

(ii) ವಿಶ್ವವಿದ್ಯಾಲಯದ ಉದ್ದೇಶವನ್ನು ಕಾರ್ಯರೂಪಕ್ಕೆ ತರುವಲ್ಲಿ ಅಗತ್ಯವಾಗಬಹುದಾದ ಅಥವಾ ಕಾರ್ಯಸಾಧ್ಯವಾಗಬಹುದಾದ ಎಲ್ಲಾ ಅಂಥ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು;

(iii) ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಮತ್ತು ಷರತ್ತುಗಳಿಗೊಳಪಟ್ಟು ಪದವಿಗಳು ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರದಾನಮಾಡುವುದು;

(iv) ಪರಿನಿಯಮಗಳನ್ವಯ ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿ ವೇತನಗಳು ಮತ್ತು ಬಹುಮಾನಗಳು, ಅವಾರ್ಡುಗಳು, ಪಾರಿತೋಷಕಗಳು ಇತ್ಯಾದಿಗಳನ್ನು ಸ್ಥಾಪಿಸುವುದು ಮತ್ತು ನೀಡುವುದು;

(v) ಪರಿನಿಯಮಗಳಲ್ಲಿ ಅಥವಾ ಸಂದರ್ಭಾನುಸಾರವಾಗಿ ನಿಯಮಗಳಲ್ಲಿ ನಿಗದಿಪಡಿಸಬಹುದಾದ ಅಂಥ ಶುಲ್ಕಗಳು, ಬಿಲ್ಲುಗಳು, ಖರೀದಿ ಪಟ್ಟಿಗಳನ್ನು ಕೇಳಿಪಡೆದುಕೊಳ್ಳುವುದು ಮತ್ತು ಸ್ವೀಕರಿಸುವುದು ಹಾಗೂ ಚಾರ್ಜುಗಳನ್ನು ವಸೂಲು ಮಾಡುವುದು;

(vi) ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಪಠ್ಯೇತರ ಚಟುವಟಿಕೆಗಳಿಗೆ ಅವಕಾಶಗಳನ್ನು ಕಲ್ಪಿಸುವುದು;

(vii) ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಕ್ಯಾಂಪಸುಗಳ, ಪ್ರಾದೇಶಿಕ ಕೇಂದ್ರಗಳ, ಅಧ್ಯಯನ ಕೇಂದ್ರಗಳ ಫ್ಯಾಕಲ್ಟಿ, ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವುದು;

(viii) ವಿಶ್ವವಿದ್ಯಾಲಯದ ಅಥವಾ ಒಂದು ಘಟಕ ಕಾಲೇಜಿನ ಅಥವಾ ಕ್ಯಾಂಪಸ್ಸಿನ, ಪ್ರಾದೇಶಿಕ ಕೇಂದ್ರದ ಮತ್ತು ಅಧ್ಯಯನ ಕೇಂದ್ರದ ಉದ್ದೇಶಕ್ಕಾಗಿ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದಿರುವ, ಯಾವುದೇ ರೀತಿಯ ಸ್ವಯಂ ದೇಣಿಗೆಗಳು ಮತ್ತು ಕೊಡುಗೆಗಳನ್ನು ಸ್ವೀಕರಿಸುವುದು ಮತ್ತು ನ್ಯಾಸ ಮತ್ತು ದತ್ತಿ ಸ್ವತ್ತುಗಳೂ ಸೇರಿದಂತೆ, ಯಾವುದೇ ಚರ ಅಥವಾ ಸ್ಥಿರ ಸ್ವತ್ತನ್ನು ಆರ್ಜಿಸುವುದು, ಹೊಂದಿರುವುದು, ನಿರ್ವಹಿಸುವುದು, ನಡೆಸುವುದು ಮತ್ತು ಹಸ್ತಾಂತರ ಮಾಡುವುದು;

(ix) ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸಿಕೊಂಡು ಬರುವುದು ಹಾಗೂ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ ವಿದ್ಯಾರ್ಥಿಗಳಿಗೆ ವಸತಿ ಸ್ಥಳಗಳಾಗಿ ಮಾನ್ಯತೆ ನೀಡುವುದು;

(x) ವಸತಿಯ ಮೇಲ್ವಿಚಾರಣೆ ಮಾಡುವುದು ಮತ್ತು ನಿಯಂತ್ರಣ ಮಾಡುವುದು ಹಾಗೂ ವಿದ್ಯಾರ್ಥಿಗಳು ಮತ್ತು ಎಲ್ಲಾ ಪ್ರವರ್ಗಗಳ ಸಿಬ್ಬಂದಿಗಳಲ್ಲಿ ಶಿಸ್ತು ನಿಯಂತ್ರಣ ಮಾಡುವುದು ಮತ್ತು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ನಡತೆ ಸಂಹಿತೆಯನ್ನು ರೂಪಿಸುವುದೂ ಒಳಗೊಂಡಂತೆ, ಅಂಥ ಸಿಬ್ಬಂದಿಗಳ ಸೇವಾಷರತ್ತುಗಳನ್ನು ನಿರೂಪಿಸುವುದು;

(xi) ಶೈಕ್ಷಣಿಕ, ಆಡಳಿತಾತ್ಮಕ ಮತ್ತು ಬೆಂಬಲ ಸಿಬ್ಬಂದಿಯ ಹುದ್ದೆಗಳನ್ನು ಮತ್ತು ಇತರ ಅವಶ್ಯ ಹುದ್ದೆಗಳನ್ನು ಸೃಜಿಸುವುದು;

(xii) ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ಉದ್ದೇಶಗಳಿಗಾಗಿ ಇತರ ವಿಶ್ವವಿದ್ಯಾಲಯಗಳೊಡನೆ ಸಹಕರಿಸುವುದು ಮತ್ತು ಸಹಯೋಗ ಹೊಂದುವುದು;

(xiii) ಶಿಕ್ಷಕರಿಗೆ, ಪಾಠಗಳನ್ನು ರಚಿಸುವವರಿಗೆ, ಮೌಲ್ಯಮಾಪಕರಿಗೆ ಮತ್ತಿತರ ಶೈಕ್ಷಣಿಕ ಸಿಬ್ಬಂದಿಗೆ ಪುನರ್ಮನನ ವ್ಯಾಸಂಗಕ್ರಮಗಳು, ಅಭಿಮುಖ ವ್ಯಾಸಂಗ ಕ್ರಮಗಳು, ಕಾರ್ಯಾಗಾರಗಳು, ವಿಚಾರಗೋಷ್ಠಿಗಳು ಮತ್ತಿತರ ಕಾರ್ಯಕ್ರಮಗಳನ್ನು ಏರ್ಪಡಿಸುವುದು ಮತ್ತು ನಡೆಸುವುದು;

(xiv) ಶೈಕ್ಷಣಿಕ ಪರಿಷತ್ತಿನ ಅನುಮೋದನೆಯೊಂದಿಗೆ ವಿಶ್ವವಿದ್ಯಾಲಯಕ್ಕೆ ಅಥವಾ ಘಟಕ ಕಾಲೇಜಿಗೆ, ಪ್ರಾದೇಶಿಕ ಕೇಂದ್ರಗಳಿಗೆ, ಅಧ್ಯಯನ ಕೇಂದ್ರಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮತ್ತು ಈ ಅಧಿನಿಯಮದಲ್ಲಿ ಕಲ್ಪಿಸಿದ ವ್ಯಾಪ್ತಿಗಿಂತ ಕಡಿಮೆಯಿಲ್ಲದಂತೆ ಕರ್ನಾಟಕದ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮಾನಕ ಗುಣಮಟ್ಟಗಳನ್ನು ನಿರ್ಧರಿಸುವುದು;

(xv) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಕಾರ್ಯರೂಪಕ್ಕೆ ತರಲು ಅವಶ್ಯವಾಗಬಹುದಾದಂಥ ಇತರ ಎಲ್ಲಾ ಕ್ರಮಗಳನ್ನು ಅಥವಾ ಕಾರ್ಯಗಳನ್ನು, ಅವು ಮೇಲೆ ಹೇಳಿದ ಅಧಿಕಾರಗಳಿಗೆ ಪ್ರಾಸಂಗಿಕವಾಗಿರಲಿ ಅಥವಾ ಇಲ್ಲದಿರಲಿ, ಕೈಗೊಳ್ಳುವುದು;

(xvi) ಪರೀಕ್ಷೆಗಳ ಆಧಾರದ ಮೇಲೆ ಅಥವಾ ಸರ್ಕಾರದಿಂದ ಅನುಮೋದಿತವಾದ ಇತರ ಯಾವುದೇ ಮೌಲ್ಯಮಾಪನ ವಿಧಾನದ ಆಧಾರದ ಮೇಲೆ ನೀಡಲು ಪದವಿಗಳು, ಡಿಪ್ಲೋಮಾಗಳು, ಪ್ರಮಾಣಪತ್ರಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಸ್ಥಾಪಿಸುವುದು;

(xvii) ಫಿಲಂಗಳು, ಕ್ಯಾಸೆಟ್‌ಗಳು, ಧ್ವನಿಸುರುಳಿಗಳು, ದೃಶ್ಯಸುರುಳಿಗಳು, ಸಿ.ಡಿ., ವಿ.ಸಿ.ಡಿ. ಮತ್ತು ಇತರ ತಂತ್ರಾಂಶಗಳೂ ಹಾಗೂ ಇತರ ಸಂಬಂಧಿತ ವಿದ್ಯುನ್ಮಾನ ಮತ್ತು ಮುದ್ರಣ ಮಾಧ್ಯಮ ಸೇರಿದಂತೆ ಬೋಧಕ ಸಾಮಗ್ರಿಗಳನ್ನು ತಯಾರಿಸುವುದಕ್ಕಾಗಿ ಅವಕಾಶ ಕಲ್ಪಿಸುವುದು;

(xviii) ಪ್ರಬಂಧಕ ಮಂಡಳಿಯ ಅನುಮೋದನೆಯೊಡನೆ ವಿಶ್ವವಿದ್ಯಾಲಯದ ಉದ್ದೇಶಗಳಿಗಾಗಿ ವಿಶ್ವವಿದ್ಯಾಲಯದ ಸ್ವತ್ತುಗಳನ್ನು ಭದ್ರತೆಯಾಗಿ ನೀಡಿ ಅಥವಾ ನೀಡದೆ ಹಣವನ್ನು ಪಡೆಯುವುದು, ಸಂಗ್ರಹಿಸುವುದು. ಚಂದಾದಾರರಾಗುವುದು ಮತ್ತು ಸಾಲ ಪಡೆಯುವುದು;

(xix) ವಿಶ್ವವಿದ್ಯಾಲಯದ ಮೇಲಿನ ಉದ್ದೇಶಗಳಿಗೆ ಸಂಬಂಧಿಸಿದ ಅಥವಾ ಪ್ರಾಸಂಗಿಕವಾದ ಯಾವುದೇ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು.

**9. ವಿಶ್ವವಿದ್ಯಾಲಯವು ಎಲ್ಲಾ ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲರಿಗೂ ಮುಕ್ತವಾಗಿರತಕ್ಕದ್ದು.**– ವಿಶ್ವವಿದ್ಯಾಲಯದ ಪ್ರವೇಶಗಳು ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲಾ ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು. ಎಲ್ಲಾ ಪ್ರವೇಶಗಳನ್ನು ಅರ್ಹತಾ ಪರೀಕ್ಷೆಗಳಲ್ಲಿನ ಅರ್ಹತೆಯ ಆಧಾರದ ಮೇಲೆ ಮಾಡತಕ್ಕದ್ದು:

ಪರಂತು, ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳ ಪ್ರವೇಶದಲ್ಲಿ ಶೇಕಡಾ ನಲವತ್ತರಷ್ಟನ್ನು ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ಮೀಸಲಿಡತಕ್ಕದ್ದು ಮತ್ತು ಪ್ರವೇಶಗಳನ್ನು ರಾಜ್ಯ ಸರ್ಕಾರವು ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡತಕ್ಕದ್ದು ಮತ್ತು ಸೀಟುಗಳನ್ನು ಅರ್ಹತೆ ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ರೂಪಿಸುವ ಮೀಸಲಾತಿ ನೀತಿಗೆ ಅನುಸಾರವಾಗಿ ಹಂಚಿಕೆ ಮಾಡತಕ್ಕದ್ದು:

ಮತ್ತು ಪರಂತು, ಯಾವುದೇ ಕೋರ್ಸಿನಲ್ಲಿ ಹತ್ತಕ್ಕಿಂತ ಕಡಿಮೆ ಸೀಟುಗಳು ಇರುವಲ್ಲಿ, ಸ್ನಾತಕೋತ್ತರ ಇಂಥ ಕೋರ್ಸುಗಳನ್ನು ಒಟ್ಟಿಗೆ ಒಂದುಗೂಡಿಸುವ ಮೂಲಕ ಮೀಸಲಿಡತಕ್ಕದ್ದು ಮತ್ತು ಯಾವುದೇ ಕೋರ್ಸಿನಲ್ಲಿ ಮೂರು ಸೀಟುಗಳಿಗಿಂತ ಕಡಿಮೆ ಇರುವಲ್ಲಿ, ಅವುಗಳನ್ನು ಸರದಿ ಸುತ್ತಿನಲ್ಲಿ ಮೀಸಲಿಡತಕ್ಕದ್ದು.

**10. ರಾಷ್ಟ್ರೀಯ ಅಧಿಮಾನ್ಯತೆ.**– ವಿಶ್ವವಿದ್ಯಾಲಯವು ಪ್ರಾರಂಭವಾದ ತರುವಾಯ ಆದಷ್ಟು ಬೇಗನೆ ಸಂಬಂಧಪಟ್ಟ ಶಾಸನಾತ್ಮಕ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳಿಂದ ಅಧಿಮಾನ್ಯತೆಯನ್ನು ಕೋರತಕ್ಕದ್ದು ಮತ್ತು ಖಾಸಗಿ ವಿಶ್ವವಿದ್ಯಾಲಯಗಳು ನಡೆಸುವ ಎಲ್ಲಾ ವ್ಯಾಸಂಗ ಕ್ರಮಗಳು ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ವಿನಿಯಮಗಳಿಗೆ ಅನುಸಾರವಾಗಿ ಇರತಕ್ಕದ್ದು.

**11. ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು.**– ಪ್ರಾಯೋಜಕ ಸಂಸ್ಥೆಯು ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದಂತೆ ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಇವುಗಳಲ್ಲಿ ಪ್ರತಿಯೊಂದನ್ನು ಪ್ರಾಯೋಜಕ ಸಂಸ್ಥೆಯು ತನ್ನ ವಿವೇಚನಾನುಸಾರ ಚಲಾಯಿಸಬಹುದು, ಎಂದರೆ:–

(i) ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಪುನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(ii) ವಿಶ್ವವಿದ್ಯಾಲಯದ ಪ್ರಥಮ ಪ್ರಬಂಧಕ ಮಂಡಳಿಯನ್ನು ರಚಿಸುವುದು;

(iii) ಪ್ರಬಂಧಕ ಮಂಡಳಿಯ ಅಧ್ಯಕ್ಷರನ್ನು ನಾಮನಿರ್ದೇಶಿಸುವುದು;

(iv) ಪ್ರಬಂಧಕ ಮಂಡಳಿಯ ಸದಸ್ಯರಾಗಿ ಮೂರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(v) ಕಾರ್ಯಕಾರಿ ಪರಿಷತ್ತಿನ ಸದಸ್ಯರಾಗಿ ಇಬ್ಬರು ವ್ಯಕ್ತಿಗಳನ್ನು ನಾಮ ನಿರ್ದೇಶಿಸುವುದು;

(vi) ವಿಶ್ವವಿದ್ಯಾಲಯದ ದತ್ತಿ ನಿಧಿಗೆ ದೇಣಿಗೆ ನೀಡಲು ನಿಧಿ ಮೂಲಗಳನ್ನು ನಿರ್ಧರಿಸುವುದು;

(vii) ವಿಶ್ವವಿದ್ಯಾಲಯದ ಹಣದ ವಿನಿಯೋಗ ಮತ್ತು ವೆಚ್ಚ ಮಾಡುವುದನ್ನು ನಿರ್ಧರಿಸುವುದು;

(viii) ಈ ಅಧಿನಿಯಮದಲ್ಲಿ ಉಪಬಂಧಿಸಿರುವ ವಿಧಾನದಲ್ಲಿ ಪ್ರಬಂಧಕ ಮಂಡಳಿಯ ಸಭೆಯಲ್ಲಿಯ ವಿವಾದಗಳನ್ನು ಬಗೆಹರಿಸುವುದು;

## ಅಧ್ಯಾಯ – III

## ವಿಶ್ವವಿದ್ಯಾಲಯದ ಅಧಿಕಾರಿಗಳು

**12. ವಿಶ್ವವಿದ್ಯಾಲಯದ ಅಧಿಕಾರಿಗಳು.–** ಈ ಮುಂದಿನವರು ವಿಶ್ವವಿದ್ಯಾಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:–

(i) ಸಂದರ್ಶಕರು;

(ii) ಸಹ–ಸಂದರ್ಶಕರು;

(iii) ಕುಲಾಧಿಪತಿಗಳು;

(iv) ಕುಲಪತಿಗಳು;

(v) ಸಹಕುಲಪತಿಗಳು;

(vi) ವ್ಯಾಸಂಗ ವಿಭಾಗಗಳ ಡೀನ್‌ಗಳು;

(vii) ಕುಲಸಚಿವರು;

(viii) ಹಣಕಾಸು ಅಧಿಕಾರಿ; ಮತ್ತು

(ix) ಪರಿನಿಯಮಗಳ ಮೂಲಕ ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಘೋಷಿಸಬಹುದಾದಂಥ ಇತರ ಅಧಿಕಾರಿಗಳು.

**13. ಸಂದರ್ಶಕರು.–** (1) ಕರ್ನಾಟಕದ ಘನತೆವೆತ್ತ ರಾಜ್ಯಪಾಲರು ವಿಶ್ವವಿದ್ಯಾಲಯದ ಸಂದರ್ಶಕರಾಗಿರತಕ್ಕದ್ದು ಮತ್ತು ಸಂದರ್ಶಕರು ವಿಶ್ವವಿದ್ಯಾಲಯದ ಕಾರ್ಯನಿರ್ವಹಣೆಯ ಸುಧಾರಣೆಗಾಗಿ ಸಲಹೆಗಳನ್ನು ನೀಡಬಹುದು.

(2) ಸಂದರ್ಶಕರು, ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಸಂದರ್ಶಕರು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ವ್ಯವಹಾರಗಳಿಗೆ ಸಂಬಂಧಿಸಿದಂತೆ, ಯಾವುದೇ ಪತ್ರ ಅಥವಾ ಮಾಹಿತಿಯನ್ನು ತರಿಸಿಕೊಳ್ಳುವುದು.

(ii) ಸಂದರ್ಶಕರು, ಅವರು ಸ್ವೀಕರಿಸಿದ ಮಾಹಿತಿಯ ಆಧಾರದ ಮೇಲೆ ವಿಶ್ವವಿದ್ಯಾಲಯಗಳ ಯಾವುದೇ ಪ್ರಾಧಿಕಾರವು ಮಾಡಿದ ಯಾವುದೇ ಆದೇಶ, ನಡೆಸಿದ ವ್ಯವಹರಣೆಗಳು ಅಥವಾ ಕೈಗೊಂಡ ತೀರ್ಮಾನಗಳು, ಈ ಅಧಿನಿಯಮ, ವಿನಿಯಮಗಳು ಅಥವಾ ನಿಯಮಗಳಿಗೆ ಪೂರಕವಾಗಿಲ್ಲವೆಂದು ಮನಗಂಡರೆ ಅವರು ವಿಶ್ವವಿದ್ಯಾಲಯದ ಹಿತಾಸಕ್ತಿಯಿಂದ ತಾವು ಸೂಕ್ತವೆಂದು ಭಾವಿಸಬಹುದಾದಂಥ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಹಾಗೆ ಹೊರಡಿಸಿದ ನಿರ್ದೇಶನಗಳನ್ನು ಸಂಬಂಧಪಟ್ಟವರೆಲ್ಲರೂ ಪಾಲಿಸತಕ್ಕದ್ದು.

**14. ಸಹ–ಸಂದರ್ಶಕರು.–** (1) ಕರ್ನಾಟಕ ಸರ್ಕಾರದ ಮಾನ್ಯ ಉನ್ನತ ಶಿಕ್ಷಣ ಸಚಿವರು ವಿಶ್ವವಿದ್ಯಾಲಯದ ಸಹ–ಸಂದರ್ಶಕರಾಗಿರತಕ್ಕದ್ದು.

(2) ಸಂದರ್ಶಕರ ಅನುಪಸ್ಥಿತಿಯಲ್ಲಿ ಸಹ–ಸಂದರ್ಶಕರು ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**15. ಕುಲಾಧಿಪತಿಗಳು.–** (1) ಕುಲಾಧಿಪತಿಯವರನ್ನು ಪ್ರಾಯೋಜಕ ಸಂಸ್ಥೆಯು ನೇಮಿಸತಕ್ಕದ್ದು.

(2) ಪ್ರಾಯೋಜಕ ಸಂಸ್ಥೆಯ ಪ್ರಸ್ತುತ ಅಧ್ಯಕ್ಷರು ಮೊದಲನೇ ಕುಲಾಧಿಪತಿಗಳಾಗಿರತಕ್ಕದ್ದು, ಅವರು ತಮ್ಮ ಜೀವನಪರ್ಯಂತ ಅಥವಾ ಅವರು ತಮ್ಮ ಪದವನ್ನು ಬಿಟ್ಟುಕೊಡುವವರೆಗೆ ಕುಲಾಧಿಪತಿಗಳಾಗಿ ಪದಧಾರಣ ಮಾಡಿರತಕ್ಕದ್ದು.

(3) ತದನಂತರದ ಕುಲಾಧಿಪತಿಗಳು, ಅಂಥ ನೇಮಕಾತಿಯನ್ನು ಪರಿಗಣಿಸುವ ಸಂದರ್ಭದಲ್ಲಿ ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ, ಪ್ರಾಯೋಜಕ ಸಂಸ್ಥೆಯ ನ್ಯಾಸಧಾರಿಯಾಗಿರತಕ್ಕದ್ದು ಅಥವಾ ಶಿಕ್ಷಣ, ವಿಜ್ಞಾನ,

ಸಂಸ್ಕೃತಿ ಅಥವಾ ಸಾರ್ವಜನಿಕ ಜೀವನ ಕ್ಷೇತ್ರಗಳಲ್ಲಿ ರಾಷ್ಟ್ರೀಯ ಮಟ್ಟದ ಛಾಪನ್ನು ಪಡೆದಿರುವ ಅಂಥ ಇತರ ವ್ಯಕ್ತಿಯಾಗಿರತಕ್ಕದ್ದು.

(4) ಹಾಗೆ ನೇಮಕಗೊಂಡ ತದನಂತರದ ಕುಲಾಧಿಪತಿಗಳು ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ಪದಧಾರಣ ಮಾಡತಕ್ಕದ್ದು.

(5) ಕುಲಾಧಿಪತಿಗಳು ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳ ಅಡಿಯಲ್ಲಿ ಅವರಿಗೆ ಪ್ರದಾನ ಮಾಡಬಹುದಾದಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು. ಅವುಗಳಲ್ಲಿ ಈ ಮುಂದಿನ ಅಧಿಕಾರಗಳು ಒಳಗೊಂಡಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುವುದು;

(ii) ಸಂದರ್ಶಕರ ಮತ್ತು ಸಹ-ಸಂದರ್ಶಕರಿಬ್ಬರ ಗೈರುಹಾಜರಿಯಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಘಟಿಕೋತ್ಸವಗಳಲ್ಲಿ ಅಧ್ಯಕ್ಷತೆಯನ್ನು ವಹಿಸುವುದು;

(iii) ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವುದು;

(iv) ಈ ಅಧಿನಿಯಮ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಅನುಸಾರವಾಗಿ ಕುಲಪತಿಗಳನ್ನು ನೇಮಿಸುವುದು ಅಥವಾ ಪುನರ್ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(v) ಈ ಅಧಿನಿಯಮದ 16ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ನಾಮನಿರ್ದೇಶಕ ಸಮಿತಿಯ ಸದಸ್ಯರಾಗಿ ಒಬ್ಬ ವ್ಯಕ್ತಿಯನ್ನು ನಾಮನಿರ್ದೇಶನ ಮಾಡುವುದು;

(vi) ಸಹಕುಲಪತಿಗಳು, ಡೀನ್, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿಗಳ ನೇಮಕಾತಿಯನ್ನು ಪೂರ್ವಾನುಮೋದಿಸುವುದು;

(vii) ಪ್ರಬಂಧಕ ಮಂಡಳಿಯ ಸದಸ್ಯರನ್ನಾಗಿ ಇಬ್ಬರು ಶಿಕ್ಷಣ ತಜ್ಞರನ್ನು ನಾಮನಿರ್ದೇಶಿಸುವುದು;

(viii) ಮೊದಲ ಸಹಕುಲಪತಿಗಳು ಮತ್ತು ಹಣಕಾಸು ಅಧಿಕಾರಿಗಳನ್ನು ನೇಮಿಸುವುದು;

(ix) ಮೊದಲ ವ್ಯವಸ್ಥಾಪನಾ ಮಂಡಳಿ, ಹಣಕಾಸು ಸಮಿತಿ, ಸಂಶೋಧನಾ ಪರಿಷತ್ತು ಹಾಗೂ ಶೈಕ್ಷಣಿಕ ಪರಿಷತ್ತುಗಳನ್ನು ರಚಿಸುವುದು;

(x) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ ಕಾರ್ಯಸೂಚಿ ವಿಷಯಗಳನ್ನು ಪೂರ್ವಾನುಮೋದಿಸುವುದು;

(xi) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ (ಪ್ರಬಂಧಕ ಮಂಡಳಿಯ ಸಭೆಯಲ್ಲಿ ಉಂಟಾದ ವಿವಾದಗಳನ್ನು ಹೊರತುಪಡಿಸಿ) ವಿವಾದಗಳನ್ನು ಪರಿಹರಿಸುವುದು.

(6) ಪದಾಧಿಕಾರಿ ಅಥವಾ ಸಂಸ್ಥೆ ಮತ್ತು ವಿಶ್ವವಿದ್ಯಾಲಯದ ಯಾವುದೇ ಇತರ ಪದಾಧಿಕಾರಿ ಅಥವಾ ಸಂಸ್ಥೆಯ ನಡುವೆ ವಿವಾದಗಳು ಉಂಟಾದಲ್ಲಿ, ಆ ವಿವಾದವನ್ನು ಕುಲಾಧಿಪತಿಯವರ ಪರ್ಯಾಲೋಚನೆಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿವಾದದ ಸಂದರ್ಭದಲ್ಲಿ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**16. ಕುಲಪತಿಗಳು.-** (1) (2)ನೇ ಉಪಪ್ರಕರಣದ ಉಪಬಂಧಗಳಿಗೆ ಅನುಸಾರವಾಗಿ ನಾಮನಿರ್ದೇಶಕ ಸಮಿತಿಯು ಶಿಫಾರಸ್ಸು ಮಾಡಿದ ಮೂರು ವ್ಯಕ್ತಿಗಳ ಪೈಕಿಯಿಂದ ಒಬ್ಬರನ್ನು ಮೂರು ವರ್ಷಗಳ ಅವಧಿಗಾಗಿ ಕುಲಪತಿಗಳನ್ನಾಗಿ, ಪರಿನಿಯಮಗಳಲ್ಲಿ ನಿಯಮಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರು ನೇಮಿಸತಕ್ಕದ್ದು. ಮೂರು ವರ್ಷಗಳ ಅವಧಿಯು ಮುಗಿದ ತರುವಾಯ, ಇದನ್ನು ಮೂರು ವರ್ಷಗಳ ಮತ್ತೊಂದು ಅವಧಿಗೆ ನವೀಕರಿಸಬಹುದು:

ಪರಂತು, ಕುಲಪತಿಯವರು, ತಮ್ಮ ಅವಧಿ ಮುಗಿದ ನಂತರವೂ ಹೊಸ ಕುಲಪತಿಯವರು ಸೇರಿಕೊಳ್ಳುವವರೆಗೆ ಪದದಲ್ಲಿ ಮುಂದುವರೆಯತಕ್ಕದ್ದು. ಆದಾಗ್ಯೂ ಈ ಅವಧಿಯು ಯಾವುದೇ ಸಂದರ್ಭದಲ್ಲಿ ಒಂದು ವರ್ಷವನ್ನು ಮೀರತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಹೇಳಿರುವ ನಾಮನಿರ್ದೇಶಕ ಸಮಿತಿಯಲ್ಲಿ ಈ ಮುಂದಿನ ವ್ಯಕ್ತಿಗಳು ಇರತಕ್ಕದ್ದು, ಎಂದರೆ:-

(i) ಕುಲಾಧಿಪತಿಯವರು ನಾಮನಿರ್ದೇಶಿಸಿದ ಒಬ್ಬ ವ್ಯಕ್ತಿ;

(ii) ಪ್ರಬಂಧಕ ಮಂಡಳಿಯ ಇಬ್ಬರು ನಾಮ ನಿರ್ದೇಶಿತರು, ಇವರಲ್ಲಿ ಒಬ್ಬರನ್ನು ಪ್ರಬಂಧಕ ಮಂಡಳಿಯು ಸಮಿತಿಯ ಸಂಚಾಲಕರೆಂದು ನಾಮನಿರ್ದೇಶಿಸತಕ್ಕದ್ದು.

(3) ನಾಮನಿರ್ದೇಶನ ಸಮಿತಿಯು, ಅರ್ಹತೆಯ ಆಧಾರದ ಮೇಲೆ ಕುಲಪತಿಯ ಹುದ್ದೆಗೆ ಸೂಕ್ತವಾದ ಮೂರು ವ್ಯಕ್ತಿಗಳ ಹೆಸರನ್ನು ಶಿಫಾರಸ್ಸು ಮಾಡತಕ್ಕದ್ದು ಮತ್ತು ಅದನ್ನು ಪ್ರತಿಯೊಬ್ಬ ವ್ಯಕ್ತಿಯ ವಿದ್ಯಾರ್ಹತೆ ಮತ್ತಿತರ ವಿಶಿಷ್ಟ ಪ್ರಶಸ್ತಿಗಳನ್ನು ತಿಳಿಸುವ ಒಂದು ಸಂಕ್ಷಿಪ್ತ ವರದಿಯೊಂದಿಗೆ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು.

(4) ಕುಲಪತಿಯವರು ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಾಹಕ ಮತ್ತು ಶೈಕ್ಷಣಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣವನ್ನು ಚಲಾಯಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯದ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೊಳಿಸತಕ್ಕದ್ದು:

ಪರಂತು, ಶಿಕ್ಷಕರ ನೇಮಕಾತಿಯನ್ನು ಹೊರತುಪಡಿಸಿ ಕೂಡಲೇ ಕ್ರಮವನ್ನು ಕೈಗೊಳ್ಳಬೇಕಾದ ತುರ್ತು ಸ್ವರೂಪದ ಯಾವುದೇ ಇತರ ವಿಷಯಗಳಲ್ಲಿ ಮತ್ತು ಅದನ್ನು ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ವಿಶ್ವವಿದ್ಯಾಲಯವು ಇದಕ್ಕಾಗಿ ಅಧಿಕೃತಗೊಳಿಸಿದ್ದ ಯಾವೊಬ್ಬ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ಇತರ ಸಂಸ್ಥೆಯು ಕೂಡಲೇ ಕ್ರಮಕೈಗೊಳ್ಳುವುದು ಸಾಧ್ಯವಿರದಿರುವಾಗ ಕುಲಪತಿಯವರು ತಾನು ಸೂಕ್ತವೆಂದು ಭಾವಿಸಬಹುದಾದಂತಹ ಕ್ರಮವನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆದು ಕೈಗೊಳ್ಳತಕ್ಕದ್ದು.

(5) ಕುಲಪತಿಯವರು ಪರಿನಿಯಮಗಳು ಅಥವಾ ನಿಯಮಗಳಲ್ಲಿ ಹೇಳಲಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು:

ಪರಂತು, ಕುಲಪತಿಗಳ ಅಭಿಪ್ರಾಯದಲ್ಲಿ, ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಯಾವುದೇ ನಿರ್ಣಯವು, ಈ ಅಧಿನಿಯಮ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳು, ವಿನಿಯಮಗಳು ಅಥವಾ ನಿಯಮಗಳ ಮೂಲಕ ಪ್ರದತ್ತವಾದ ಅಧಿಕಾರದ ಹೊರಗಿದ್ದರೆ ಅಥವಾ ವಿಶ್ವವಿದ್ಯಾಲಯದ ಹಿತಾಸಕ್ತಿಗೆ ಪ್ರತಿಕೂಲವಾಗಬಹುದಾಗಿದ್ದರೆ, ಅದರ ನಿರ್ಣಯದ ದಿನಾಂಕದಿಂದ ಹದಿನೈದು ದಿನಗಳ ಒಳಗೆ ತನ್ನ ನಿರ್ಣಯವನ್ನು ಪರಿಷ್ಕರಿಸಲು ಸಂಬಂಧಪಟ್ಟ ಪ್ರಾಧಿಕಾರವನ್ನು ಆತನು ಕೋರತಕ್ಕದ್ದು ಮತ್ತು ಪ್ರಾಧಿಕಾರವು ಅಂಥ ನಿರ್ಣಯವನ್ನು ಸಂಪೂರ್ಣವಾಗಿ ಅಥವಾ ಭಾಗಶಃವಾಗಿ ಪರಿಷ್ಕರಿಸಲು ನಿರಾಕರಿಸಿದ ಸಂದರ್ಭದಲ್ಲಿ ಅಥವಾ ಹದಿನೈದು ದಿನಗಳೊಳಗೆ ಯಾವುದೇ ನಿರ್ಣಯವನ್ನು ತೆಗೆದುಕೊಳ್ಳಲು ವಿಫಲವಾದಲ್ಲಿ, ನಂತರ ಅಂಥ ವಿಷಯವನ್ನು ಕುಲಾಧಿಪತಿಗಳಿಗೆ ಕಳುಹಿಸತಕ್ಕದ್ದು ಮತ್ತು ಈ ಬಗ್ಗೆ ಇವರ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

(6) ಕುಲಪತಿಯವರ ಸೇವೆಗಳನ್ನು, ಪ್ರಬಂಧಕ ಮಂಡಳಿಯ ಅನುಮೋದನೆಯೊಂದಿಗೆ ಮತ್ತು ಸಹಜ ನ್ಯಾಯದ ತತ್ವಗಳನ್ನು ಅನುಸರಿಸಿದ ನಂತರ ಹಾಗೂ ಶಿಸ್ತಿನ ಆಧಾರದ ಮೇಲೆ ಅಂತ್ಯಗೊಳಿಸುವ ಸಂದರ್ಭವೂ ಸೇರಿದಂತೆ, ಪ್ರಕರಣದ ಬಗ್ಗೆ ಕುಲಪತಿಯು ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡಿದ ತರುವಾಯ, ಕುಲಾಧಿಪತಿಯವರು ಅಂತ್ಯಗೊಳಿಸಬಹುದು.

(7) ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಸಂದರ್ಶಕರು, ಸಹ-ಸಂದರ್ಶಕರು ಮತ್ತು ಕುಲಾಧಿಪತಿಯವರು ಇವರುಗಳ ಗೈರು ಹಾಜರಿಯ ಸಂದರ್ಭದಲ್ಲಿ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**17. ಸಹಕುಲಪತಿಗಳು.**- ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಮೂರು ಜನರನ್ನು ಮೀರದಂತೆ ಸಹಕುಲಪತಿಗಳನ್ನು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**18. ವ್ಯಾಸಂಗ ವಿಭಾಗಗಳ ಡೀನ್‌ಗಳು.**- ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಪರಿನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವ್ಯಾಸಂಗ ವಿಭಾಗಗಳ ಡೀನ್‌ಗಳನ್ನು ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**19. ಕುಲಸಚಿವರು.**- (1) ಕುಲಾಧಿಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಸಚಿವರನ್ನು ನೇಮಕ ಮಾಡತಕ್ಕದ್ದು.

(2) ಪರಿನಿಯಮಗಳಲ್ಲಿ ಪರಿಭಾಷಿಸಿರುವಂಥ ಎಲ್ಲಾ ಕರಾರುಗಳನ್ನು ವಿಶ್ವವಿದ್ಯಾಲಯದ ಪರವಾಗಿ ಕುಲಸಚಿವರು ಮಾಡಿಕೊಳ್ಳತಕ್ಕದ್ದು ಮತ್ತು ಅದಕ್ಕೆ ಸಹಿ ಹಾಕತಕ್ಕದ್ದು.

(3) ಕುಲಸಚಿವರು ವಿಶ್ವವಿದ್ಯಾಲಯದ ಪರವಾಗಿ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಪರಿನಿಯಮಗಳಿಂದ ಪ್ರದತ್ತಗೊಳಿಸಬಹುದಾದಂಥ ಅಥವಾ ಕುಲಾಧಿಪತಿಯವರು ಮತ್ತು ಕುಲಪತಿಯವರು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು ವಿಶ್ವವಿದ್ಯಾಲಯದ ದಾಖಲೆಗಳು ಮತ್ತು ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು, ಕುಲಪತಿಯವರು ಅಥವಾ ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಅಂಥ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿತಕ್ಕದ್ದು.

**20. ಹಣಕಾಸು ಅಧಿಕಾರಿ.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು, ಪರಿನಿಯಮಗಳ ಮೂಲಕ ಪ್ರದತ್ತಗೊಳಿಸಬಹುದಾದ ಅಂಥ ವಿಧಾನದಲ್ಲಿ ಹಣಕಾಸು ಅಧಿಕಾರಿಯನ್ನು ನೇಮಕ ಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**21. ಇತರ ಅಧಿಕಾರಿಗಳು.–** ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ ನೇಮಕಾತಿಯ ವಿಧಾನ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಕರ್ತವ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ – IV

## ವಿಶ್ವವಿದ್ಯಾಲಯದ ಪ್ರಾಧಿಕಾರಗಳು

**22. ವಿಶ್ವವಿದ್ಯಾಲಯದ ಪ್ರಾಧಿಕಾರಗಳು.–** ಈ ಮುಂದಿನವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:–

(i) ಪ್ರಬಂಧಕ ಮಂಡಳಿ;

(ii) ವ್ಯವಸ್ಥಾಪನಾ ಮಂಡಳಿ;

(iii) ಶೈಕ್ಷಣಿಕ ಪರಿಷತ್ತು;

(iv) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು;

(v) ಹಣಕಾಸು ಸಮಿತಿ; ಮತ್ತು

(vi) ವಿಶ್ವವಿದ್ಯಾಲಯದ ಪ್ರಾಧಿಕಾರಗಳೆಂದು ಪರಿನಿಯಮಗಳ ಮೂಲಕ ಘೋಷಿಸಬಹುದಾದ ಅಂಥ ಇತರ ಪ್ರಾಧಿಕಾರಗಳು.

**23. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು.–** (1) ಪ್ರಬಂಧಕ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು – ಅಧ್ಯಕ್ಷರು;

(ii) ಕುಲಪತಿಯವರು – ಸದಸ್ಯರು;

(iii) ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಅಥವಾ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(iv) ಸರ್ಕಾರದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(v) ರಾಜ್ಯ ಸರ್ಕಾರವು ನಾಮ ನಿರ್ದೇಶನ ಮಾಡಿದ ಆಡಳಿತವನ್ನು ಒಳಗೊಂಡಂತೆ ವ್ಯವಸ್ಥಾಪನೆ, ಹಣಕಾಸು ಅಥವಾ ಯಾವುದೇ ಇತರ ವಿಶೇಷ ಕ್ಷೇತ್ರದಲ್ಲಿನ ಒಬ್ಬರು ತಜ್ಞರು;

(vi) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಇಬ್ಬರು ವ್ಯಕ್ತಿಗಳು ಅವರ ಪೈಕಿ ಒಬ್ಬರು ಮಹಿಳೆಯಾಗಿರತಕ್ಕದು;

(vii) ಸಹ ಕುಲಪತಿಯವರು ಮತದಾನದ ಹಕ್ಕಿಲ್ಲದ ಸದಸ್ಯರಾಗಿರತಕ್ಕದ್ದು;

(viii) ವಿಶ್ವವಿದ್ಯಾಲಯ ಅನುದಾನ ಆಯೋಗದ ನಾಮನಿರ್ದೇಶಿತ ಒಬ್ಬ ಸುಪ್ರಸಿದ್ಧ ಶಿಕ್ಷಣ ತಜ್ಞರು.

(2) ಕುಲಸಚಿವರು ಪ್ರಬಂಧಕ ಮಂಡಳಿಯ ಮತ ದಾನದ ಹಕ್ಕಿರದ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ಪ್ರಬಂಧಕ ಮಂಡಳಿಯ ಸದಸ್ಯರ ಪದಾವಧಿ, ಸರ್ಕಾರದಿಂದ ನಾಮನಿರ್ದೇಶಿತರಾದ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ನೇಮಕಾತಿ, ನವೀಕರಣ ಮತ್ತು ತೆಗೆದುಹಾಕುವುದು ಮುಂತಾದವುಗಳು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಾಧಿಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯಿಂದ ನಾಮನಿರ್ದೇಶಿತರಾದ ಯಾರಾದರೂ ಒಬ್ಬರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು. ಅಂಥ ಸಭೆಯ ಅಧ್ಯಕ್ಷತೆಯನ್ನು ವಹಿಸುವುದಕ್ಕೆ ಪ್ರಾಯೋಜಕ ಸಂಸ್ಥೆಯು ಯಾವೊಬ್ಬ ವ್ಯಕ್ತಿಯನ್ನೂ ನಾಮನಿರ್ದೇಶನ ಮಾಡಿರದಿದ್ದಲ್ಲಿ, ಸಭೆಯಲ್ಲಿ ಹಾಜರಿರುವ ಸದಸ್ಯರು ಸರಳ ಬಹುಮತದ ಮೂಲಕ ಅವರುಗಳ ಪೈಕಿಯಿಂದಲೇ ಆ ಸಭೆಗೆ ಮಾತ್ರವೇ ಅಧ್ಯಕ್ಷನನ್ನು ಚುನಾಯಿಸತಕ್ಕದ್ದು.

(5) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಿಗೆ, ಅಂಥ ಸಭೆಯಲ್ಲಿ ಹಾಜರಾಗುವ ಮತ್ತು ಮತದಾನ ನೀಡುವ ಮೂರು ಜನ ಸದಸ್ಯರು ಗಣಪೂರ್ತಿ (ಕೋರಂ) ಆಗಿರತಕ್ಕದ್ದು:

ಪರಂತು, ಪ್ರಬಂಧಕ ಮಂಡಳಿಯ ಯಾವುದೇ ಸಭೆಯ ಕೋರಂ ಪೂರ್ಣವಾಗಬೇಕಾದರೆ ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಿರುವುದು ಮತ್ತು ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ನಾಮನಿರ್ದೇಶಿತರು ಹಾಜರಾಗದೇ ಇದ್ದಾಗ ಕುಲಪತಿಯವರು ಹಾಜರಿರುವುದು ಯಾವಾಗಲೂ ಅವಶ್ಯವಾಗಿರತಕ್ಕದ್ದು.

(6) ಪ್ರಬಂಧಕ ಮಂಡಳಿಯು ವಿಶ್ವವಿದ್ಯಾಲಯದ ಪ್ರಧಾನ ಪ್ರಬಂಧಕ ಸಂಸ್ಥೆಯಾಗಿರತಕ್ಕದ್ದು ಮತ್ತು ಅದು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಕಗೊಳಿಸುವುದು;

(ii) ವಿಶ್ವವಿದ್ಯಾಲಯವು ಅನುಸರಿಸಬೇಕಾದ ಕಾರ್ಯನೀತಿಗಳನ್ನು ರಚಿಸುವುದು;

(iii) ಈ ಅಧಿನಿಯಮದ ಅಥವಾ ಪರಿನಿಯಮಗಳ ಅಥವಾ ನಿಯಮಗಳ ಉಪಬಂಧಗಳಿಗೆ ಅನುಗುಣವಾಗಿ ಇರದ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ತೀರ್ಮಾನಗಳನ್ನು ಪುನರೀಕ್ಷಿಸುವುದು;

(iv) ವಿಶ್ವವಿದ್ಯಾಲಯದ ಆಯವ್ಯಯ ಮತ್ತು ವಾರ್ಷಿಕ ವರದಿಗಳನ್ನು ಅನುಮೋದಿಸುವುದು;

(v) ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸುವುದು ಅಥವಾ ಈಗಾಗಲೇ ಇರುವ ಪರಿನಿಯಮಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವುದು ಅಥವಾ ನಿರಸನಗೊಳಿಸುವುದು;

(vi) ವಿಶ್ವವಿದ್ಯಾಲಯವನ್ನು ಸ್ವಯಂಸಮಾಪನಗೊಳಿಸುವ ನಿರ್ಧಾರವನ್ನು ತೆಗೆದುಕೊಳ್ಳುವುದು;

(vii) ಸರ್ಕಾರಕ್ಕೆ ಸಲ್ಲಿಸುವ ಪ್ರಸ್ತಾವಗಳನ್ನು ಅನುಮೋದಿಸುವುದು;

(viii) ಶುಲ್ಕ ನಿಯಂತ್ರಣ ಸಮಿತಿಗೆ ಮೂವರು ಸದಸ್ಯರನ್ನು ನಾಮನಿರ್ದೇಶನ ಮಾಡುವುದು;

(ix) ವಿಶ್ವವಿದ್ಯಾಲಯದ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕೆ ಅಪೇಕ್ಷಣೀಯವೆಂದು ಕಂಡುಬರುವಂಥ ತೀರ್ಮಾನಗಳನ್ನು ಮತ್ತು ಕ್ರಮಗಳನ್ನು ಕೈಗೊಳ್ಳುವುದು.

(7) ಪ್ರಬಂಧಕ ಮಂಡಳಿಯು ಒಂದು ವರ್ಷದಲ್ಲಿ ಕನಿಷ್ಠ ಮೂರು ಸಲ ಸಭೆ ಸೇರತಕ್ಕದ್ದು.

(8) ಪ್ರಬಂಧಕ ಮಂಡಳಿಯು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಸಮಯ ಮತ್ತು ಸ್ಥಳದಲ್ಲಿ ಸಭೆ ಸೇರತಕ್ಕದ್ದು.

**24. ವ್ಯವಸ್ಥಾಪನಾ ಮಂಡಳಿ.**– (1) ವ್ಯವಸ್ಥಾಪನಾ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಗಳು;

(ii) ಸಹಕುಲಪತಿಗಳು;

(iii) ಕುಲಸಚಿವರು;

(iv) ಪ್ರಾಯೋಜಕ ಸಂಸ್ಥೆಯ ಇಬ್ಬರು ನಾಮನಿರ್ದೇಶಿತರು;

(v) ಕುಲಪತಿಗಳು ನಾಮನಿರ್ದೇಶಿಸಬಹುದಾದ ವಿದ್ಯಾಲಯಗಳ ಇಬ್ಬರು ಡೀನ್‌ಗಳು;

(2) ಕುಲಪತಿಯವರು ವ್ಯವಸ್ಥಾಪನಾ ಮಂಡಳಿಯ ಅಧ್ಯಕ್ಷರಾಗಿರತಕ್ಕದ್ದು ಮತ್ತು ಕುಲಸಚಿವರು ವ್ಯವಸ್ಥಾಪನಾ ಮಂಡಳಿಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ವ್ಯವಸ್ಥಾಪನಾ ಮಂಡಳಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ವ್ಯವಸ್ಥಾಪನಾ ಮಂಡಳಿಯ ಎಲ್ಲಾ ಸಭೆಗಳಲ್ಲಿ ಯಾವಾಗಲೂ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು ಹಾಗೂ ಕುಲಪತಿಯವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೇ ಇದ್ದ ಸಂದರ್ಭದಲ್ಲಿ ಸಭೆಯಲ್ಲಿ ಹಾಜರಿರುವ ಸದಸ್ಯರು ಚುನಾಯಿಸಿದ ಯಾವುದೇ ಇತರ ಸದಸ್ಯರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ವ್ಯವಸ್ಥಾಪನಾ ಮಂಡಳಿಯ ಸಭೆಯಲ್ಲಿ ಯಾವುದೇ ವಿಷಯವನ್ನು ಕುರಿತು ವಿವಾದ ಉಂಟಾದಲ್ಲಿ ಸದರಿ ವಿಷಯವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯದ ಬಗ್ಗೆ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**25. ಶೈಕ್ಷಣಿಕ ಪರಿಷತ್ತು.**–(1) ಶೈಕ್ಷಣಿಕ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಕಾರ್ಯದರ್ಶಿಗಳು

(iv) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಶೈಕ್ಷಣಿಕ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಶೈಕ್ಷಣಿಕ ಸಂಸ್ಥೆಯಾಗಿರತಕ್ಕದ್ದು ಮತ್ತು ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಹಾಗೂ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**26. ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು.**– (1) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಸಂಶೋಧನಾ ಮತ್ತು ಅನ್ವೇಷಣಾ ಸಮಿತಿಯಾಗಿರತಕ್ಕದ್ದು ಹಾಗೂ ಸಂಶೋಧನಾ ಕ್ಷೇತ್ರಗಳ ಆದ್ಯತೆಯೂ ಒಳಗೊಂಡಂತೆ, ವಿಶ್ವವಿದ್ಯಾಲಯವು ಕೈಗೊಳ್ಳಬೇಕಾದ ಸಂಶೋಧನೆಯ ಬಗ್ಗೆ ಒಂದು ವ್ಯಾಪಕವಾದ ಪರಿಪೂರ್ಣ ಭವಿಷ್ಯದ್ ದೃಷ್ಟಿಯನ್ನು ಒದಗಿಸತಕ್ಕದ್ದು. ಈ ಪರಿಷತ್ತು, ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಮತ್ತು ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಸಂಶೋಧನೆ ಮತ್ತು ಅನ್ವೇಷಣಾ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಸಂಶೋಧನೆಯ ಡೀನ್ – ಕಾರ್ಯದರ್ಶಿ

(iv) ಅನ್ವೇಷಣಾ ವಿಭಾಗದ ಮುಖ್ಯಸ್ಥರು – ಸದಸ್ಯರು

(v) ಎಲ್ಲಾ ವ್ಯಾಸಂಗ ವಿಭಾಗಗಳ ಡೀನ್‌ಗಳು – ಸದಸ್ಯರು ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

27. **ಹಣಕಾಸು ಸಮಿತಿ.**– (1) ಹಣಕಾಸು ಸಮಿತಿ ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು ಅಥವಾ ಅವರ ನಾಮನಿರ್ದೇಶಿತರು – ಅಧ್ಯಕ್ಷರು

(ii) ಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಸದಸ್ಯರು

(iv) ಹಣಕಾಸು ಅಧಿಕಾರಿ – ಕಾರ್ಯದರ್ಶಿ

(v) ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು – ಸದಸ್ಯರು; ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಹಣಕಾಸು ಸಮಿತಿಯು ಹಣಕಾಸಿನ ವಿಷಯಗಳನ್ನು ಕೈಗೊಳ್ಳುವ ವಿಶ್ವವಿದ್ಯಾಲಯದ ಪ್ರಧಾನ ಹಣಕಾಸು ಸಂಸ್ಥೆಯಾಗಿರತಕ್ಕದ್ದು ಹಾಗೂ ಅದು ಈ ಅಧಿನಿಯಮ, ನಿಯಮಗಳು ಮತ್ತು ಪರಿನಿಯಮಗಳ ಉಪಬಂಧಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಹಣಕಾಸು ವಿಷಯಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

28. **ಇತರ ಪ್ರಾಧಿಕಾರಗಳು.**– ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ರಚನೆ, ಅಧಿಕಾರಗಳು ಹಾಗೂ ಪ್ರಕಾರ್ಯಗಳು ಪರಿನಿಯಮಗಳಿಂದ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

29. **ಒಂದು ಪ್ರಾಧಿಕಾರದ ಅಥವಾ ಸಂಸ್ಥೆಯ ಸದಸ್ಯತ್ವಕ್ಕೆ ಅನರ್ಹತೆ.**– ವಿಶ್ವವಿದ್ಯಾಲಯದ ಸಂಸ್ಥೆಗಳ ಯಾವುವೇ ಪ್ರಾಧಿಕಾರಗಳ ಒಬ್ಬ ವ್ಯಕ್ತಿಯು,–

(ಎ) ಅಸ್ವಸ್ಥ ಚಿತ್ತನಾಗಿದ್ದು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿಸಲ್ಪಟ್ಟಿದ್ದರೆ;

(ಬಿ) ಅವಿಮುಕ್ತ ದಿವಾಳಿಯಾಗಿದ್ದರೆ;

(ಸಿ) ನೈತಿಕ ಅಧಃಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದರೆ;

(ಡಿ) ಖಾಸಗಿ ಬೋಧನಾ ತರಗತಿಗಳನ್ನು ನಡೆಸುತ್ತಿದ್ದರೆ ಅಥವಾ ಸ್ವತಃ ನಿರತನಾಗಿದ್ದರೆ;

(ಇ) ಯಾವುದೇ ವಿಧದಲ್ಲಿ, ಎಲ್ಲಿಯೇ, ಯಾವುದೇ ಪರೀಕ್ಷೆಯನ್ನು ನಡೆಸುವಲ್ಲಿ ಅನುಚಿತ ಅಭ್ಯಾಸದಲ್ಲಿ ತೊಡಗಿದ್ದಕ್ಕಾಗಿ ಅಥವಾ ಉತ್ತೇಜಿಸಿದ್ದಕ್ಕಾಗಿ ದಂಡಿತನಾಗಿದ್ದರೆ;

(ಎಫ್) ಪ್ರಾಯೋಜಿತ ಸಂಸ್ಥೆಯು ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಯಾವೊಬ್ಬ ಸದಸ್ಯನನ್ನು ಆ ಪದವನ್ನು ಹೊಂದಿರುವುದಕ್ಕೆ ಅರ್ಹನಲ್ಲನೆಂದು ಲಿಖಿತದಲ್ಲಿ ಅಭಿಪ್ರಾಯ ನೀಡಿದಾಗಲೆಲ್ಲಾ,

–ಸದಸ್ಯನಾಗಿರುವುದಕ್ಕೆ ಅನರ್ಹನಾಗತಕ್ಕದ್ದು.

30. **ಖಾಲಿಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ.**– ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಕಾರ್ಯ ಅಥವಾ ವ್ಯವಹರಣೆಗಳು ಕೇವಲ ಅದರಲ್ಲಿ ಯಾವುದೇ ಖಾಲಿಸ್ಥಾನ ಇದೆ ಎಂಬ ಕಾರಣದಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣದಿಂದ ಮಾತ್ರವೇ ಅಸಿಂಧುವಾಗತಕ್ಕದ್ದಲ್ಲ.

31. **ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು.**– (1) ಯಾವುವೇ ಕಾರ್ಯಸೂಚಿ ವಿಷಯಗಳನ್ನು ಕುಲಾಧಿಪತಿಯವರ ಪೂರ್ವಾನುಮೋದನೆಯನ್ನು ಪಡೆಯದೇ ಪ್ರಬಂಧಕ ಮಂಡಳಿಯ ಅಥವಾ ಕಾರ್ಯಕಾರಿ ಪರಿಷತ್ತು ಅಥವಾ ಯಾವುದೇ ಸಮಿತಿಯ ಸಭೆಗಳ ಕಾರ್ಯಸೂಚಿ ವಿಷಯಗಳಲ್ಲಿ ಸೇರಿಸತಕ್ಕದ್ದಲ್ಲ ಅಥವಾ ಚರ್ಚೆಗೆ ತೆಗೆದುಕೊಳ್ಳತಕ್ಕದ್ದಲ್ಲ ಮತ್ತು ತೀರ್ಮಾನಿಸತಕ್ಕದ್ದಲ್ಲ.

(2) ಈ ಅಧಿನಿಯಮದ ಯಾವುದೇ ಉಪಬಂಧಗಳನ್ನು ಪಾಲಿಸದೆ ಇರುವ ಸಂದರ್ಭದಲ್ಲಿ, ಕುಲಾಧಿಪತಿಯವರು ವಿಶ್ವವಿದ್ಯಾಲಯದ ಯಾವುದೇ ಪದಾಧಿಕಾರಿ ಅಥವಾ ಸಂಸ್ಥೆಯು ತೆಗೆದುಕೊಂಡ ಎಲ್ಲಾ ತೀರ್ಮಾನಗಳನ್ನು ವಿಪರ್ಯಯಗೊಳಿಸುವ ಮೂಲಕ ಪರಿಹಾರ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಅಧಿಕಾರವನ್ನು ಎಲ್ಲಾ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಅಂಥ ಪರಿಹಾರ ಕ್ರಮದ ಪರಿಣಾಮವಾಗಿ ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ವಿಶ್ವವಿದ್ಯಾಲಯದ ಪದಾಧಿಕಾರಿ ಅಥವಾ ಸಂಸ್ಥೆಯು ಕೈಗೊಂಡಿದ್ದ ಎಲ್ಲಾ ಅಂಥ ಕ್ರಮಗಳು, ಮೊದಲಿನಿಂದಲೂ ಶೂನ್ಯ ಮತ್ತು ಅಕೃತ ಎಂದು ಭಾವಿಸತಕ್ಕದ್ದು ಹಾಗೂ ತತ್ಪರಿಣಾಮವಾಗಿ, ಉಪಬಂಧ ಪಾಲಿಸದೇ ಇದ್ದ ವಿಷಯ ಅಥವಾ ನಿರ್ಧಾರದ ಸಂಬಂಧದಲ್ಲಿ ಅದಕ್ಕೆ ಮುಂಚೆ ಇದ್ದ ವಸ್ತುಸ್ಥಿತಿಯೇ ಮುಂದುವರಿಯತಕ್ಕದ್ದು.

## ಅಧ್ಯಾಯ – V

## ಪರಿನಿಯಮಗಳು ಮತ್ತು ವಿನಿಯಮಗಳು

**32. ಪರಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಪರಿನಿಯಮಗಳು ವಿಶ್ವವಿದ್ಯಾಲಯಕ್ಕೆ ಮತ್ತು ಸಿಬ್ಬಂದಿಗೆ ಸಂಬಂಧಿಸಿದ ಎಲ್ಲಾ ಅಥವಾ ಯಾವುದೇ ವಿಷಯಕ್ಕೆ ಈ ಕೆಳಗಿನಂತೆ ಉಪಬಂಧ ಕಲ್ಪಿಸಬಹುದು, ಎಂದರೆ:-

(i) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಕಾರ್ಯಕಲಾಪಗಳನ್ನು ನಡೆಸುವ ಮತ್ತು ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸದಿರುವ ಸಂಸ್ಥೆಗಳ ರಚನೆಯ ಕಾರ್ಯವಿಧಾನ;

(ii) ಶಾಶ್ವತ ಶಾಸನಬದ್ಧ ದತ್ತಿ ನಿಧಿ, ವಿಶ್ವವಿದ್ಯಾಲಯ ದತ್ತಿ ನಿಧಿ, ಸಾಮಾನ್ಯ ನಿಧಿ ಹಾಗೂ ಅಭಿವೃದ್ಧಿ ನಿಧಿಗಳ ನಿರ್ವಹಣೆ;

(iii) ಕುಲಪತಿಗಳು, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರ ನೇಮಕಾತಿಯ ನಿಬಂಧನೆಗಳು ಹಾಗೂ ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಪ್ರಕಾರ್ಯಗಳು;

(iv) ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ, ಅಧ್ಯಾಪಕರ ಮತ್ತು ನೌಕರರ ನೇಮಕಾತಿ ವಿಧಾನ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(v) ವಿಶ್ವವಿದ್ಯಾಲಯ ಹಾಗೂ ಅದರ ಅಧಿಕಾರಿಗಳು, ವ್ಯಾಸಂಗ ವಿಭಾಗದ (ಫ್ಯಾಕಲ್ಟಿ) ಸದಸ್ಯರು, ನೌಕರರು ಹಾಗೂ ವಿದ್ಯಾರ್ಥಿಗಳ ನಡುವೆ ಉಂಟಾದ ವಿವಾದಗಳನ್ನು ಪರಿಹರಿಸುವ ಕಾರ್ಯವಿಧಾನ;

(vi) ವಿಭಾಗಗಳು ಮತ್ತು ವ್ಯಾಸಂಗ ವಿಭಾಗಗಳ (ಫ್ಯಾಕಲ್ಟಿಗಳ) ಸೃಜನೆ, ರದ್ಧತಿ ಅಥವಾ ಪುನಾರಚನೆ;

(vii) ಇತರ ವಿಶ್ವವಿದ್ಯಾಲಯಗಳು ಅಥವಾ ಉನ್ನತ ಕಲಿಕಾ ಸಂಸ್ಥೆಗಳ ಜೊತೆಯಲ್ಲಿ ಸಹಕರಿಸಬೇಕಾದ ರೀತಿ;

(viii) ಗೌರವ ಪದವಿಗಳ ನೀಡಿಕೆಯ ಕಾರ್ಯವಿಧಾನ;

(ix) ಉಚಿತ ಶಿಕ್ಷಣ (ಫ್ರಿಶಿಪ್) ಮತ್ತು ವಿದ್ಯಾರ್ಥಿವೇತನ ಮಂಜೂರಾತಿಗೆ ಸಂಬಂಧಿಸಿದ ಉಪಬಂಧಗಳು;

(x) ವಿವಿಧ ವ್ಯಾಸಂಗ ಕ್ರಮಗಳಲ್ಲಿನ ಸೀಟುಗಳ ಸಂಖ್ಯೆಗೆ ಸಂಬಂಧಿಸಿದ ಕಾರ್ಯನೀತಿಗಳು ಮತ್ತು ಅಂಥ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಕಾರ್ಯವಿಧಾನ;

(xi) ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಶುಲ್ಕಕ್ಕೆ ಸಂಬಂಧಿಸಿದ ಕಾರ್ಯನೀತಿ;

(xii) ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಉಚಿತ ಶಿಕ್ಷಣ, ಪದಕಗಳು ಹಾಗೂ ಬಹುಮಾನಗಳನ್ನು ಪ್ರಾರಂಭಿಸುವುದು;

(xiii) ಹುದ್ದೆಗಳ ಸೃಜನೆ ಮತ್ತು ರದ್ಧತಿಯ ಕಾರ್ಯವಿಧಾನ ;

(xiv) ಪ್ರಬಂಧಕ ಮಂಡಳಿಯು ನಿರ್ಧರಿಸಬಹುದಾದ ಅಥವಾ ಈ ಅಧಿನಿಯಮದ ಅಡಿಯಲ್ಲಿ ಪರಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬೇಕಾದ ಅಗತ್ಯತೆಯುಳ್ಳ ಯಾವುದೇ ಇತರ ವಿಷಯಗಳು.

33. ಪರಿನಿಯಮಗಳ ರಚನೆ ವಿಧಾನ.– (1) ವ್ಯವಸ್ಥಾಪನಾ ಮಂಡಳಿಯು ರಚಿಸಿದ ಮೊದಲ ಪರಿನಿಯಮಗಳನ್ನು ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ವ್ಯವಸ್ಥಾಪನಾ ಮಂಡಳಿಯು ಸಲ್ಲಿಸಿದ ಮೊದಲ ಪರಿನಿಯಮಗಳನ್ನು ಪ್ರಬಂಧಕ ಮಂಡಳಿಯು ಪರಿಗಣಿಸತಕ್ಕದ್ದು ಹಾಗೂ ತಾನು ಅವಶ್ಯವೆಂದು ಭಾವಿಸಬಹುದಾದ ಅಂಥ ಮಾರ್ಪಾಡುಗಳು, ಯಾವುದಾದರು ಇದ್ದಲ್ಲಿ, ಅವುಗಳೊಡನೆ ತನ್ನ ಅನುಮೋದನೆಯನ್ನು ನೀಡತಕ್ಕದ್ದು.

(3) ವಿಶ್ವವಿದ್ಯಾಲಯವು, ಪ್ರಬಂಧಕ ಮಂಡಳಿಯು ಅನುಮೋದಿಸಿದ ಮೊದಲ ಪರಿನಿಯಮಗಳನ್ನು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ಪ್ರಕಟಿಸತಕ್ಕದ್ದು ಮತ್ತು ತದನಂತರ ಮೊದಲ ಪರಿನಿಯಮಗಳ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

34. **ಪರಿನಿಯಮಗಳ ತಿದ್ದುಪಡಿಯ ಅಧಿಕಾರ.**– ಪ್ರಬಂಧಕ ಮಂಡಳಿಯು ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸಬಹುದು ಅಥವಾ ಪರಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ಅವನ್ನು ನಿರಸನಗೊಳಿಸಬಹುದು.

35. **ವಿನಿಯಮಗಳು.**– ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ವಿನಿಯಮಗಳು ಈ ಮುಂದಿನ ವಿಷಯಗಳಿಗೆ ಉಪಬಂಧಗಳನ್ನು ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ವಿದ್ಯಾರ್ಥಿ ಪಟ್ಟಿಯಲ್ಲಿ ಅವರುಗಳ ದಾಖಲಾತಿ ಹಾಗೂ ಮುಂದುವರಿಕೆ;

(ii) ವಿಶ್ವವಿದ್ಯಾಲಯದ ಎಲ್ಲಾ ಪದವಿಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ನಿಗದಿಪಡಿಸತಕ್ಕ ವ್ಯಾಸಂಗ ಕ್ರಮಗಳು;

(iii) ಪದವಿಗಳ ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರದಾನ;

(iv) ಸಂಶೋಧನಾ ವೇತನಗಳು (ಫೆಲೋಶಿಪ್), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಪದಕಗಳು ಮತ್ತು ಬಹುಮಾನಗಳನ್ನು ನೀಡಲು ಷರತ್ತುಗಳು;

(v) ಪರೀಕ್ಷೆಗಳನ್ನು ನಡೆಸುವುದು ಹಾಗೂ ಪರೀಕ್ಷೆ ನಡೆಸುವ ಸಂಸ್ಥೆಗಳು, ಪರೀಕ್ಷಕರು, ಪರೀಕ್ಷಾ ಮೇಲ್ವಿಚಾರಕರು, ಟ್ಯಾಬುಲೇಟರ್‌ಗಳು ಮತ್ತು ಮಾಡರೇಟರ್‌ಗಳ ನೇಮಕಾತಿ ಷರತ್ತುಗಳು ಮತ್ತು ವಿಧಾನ ಹಾಗೂ ಅವರ ಕರ್ತವ್ಯಗಳು;

(vi) ವಿಶ್ವವಿದ್ಯಾಲಯದ ಪರೀಕ್ಷೆಗಳಿಗೆ, ಪದವಿಗಳಿಗೆ ಹಾಗೂ ಇತರ ಶೈಕ್ಷಣಿಕ ಪ್ರಶಸ್ತಿಗಳಿಗೆ ಪ್ರವೇಶಕ್ಕೆ ವಿಧಿಸತಕ್ಕ ಶುಲ್ಕ;

(vii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನಲ್ಲಿ ವಿದ್ಯಾರ್ಥಿಗಳ ನಿವಾಸಕ್ಕಾಗಿ ಷರತ್ತುಗಳು;

(viii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಶಿಸ್ತು ಪಾಲನೆ;

(ix) ಈ ಅಧಿನಿಯಮದ ಅಡಿಯಲ್ಲಿನ ಪರಿನಿಯಮಗಳಲ್ಲಿ ಉಪಬಂಧ ಕಲ್ಪಿಸಬಹುದಾಂಥ ಇತರ ಎಲ್ಲಾ ವಿಷಯಗಳು.

36. **ವಿನಿಯಮಗಳ ರಚನೆ ವಿಧಾನ.**– ವಿನಿಯಮಗಳನ್ನು ಶೈಕ್ಷಣಿಕ ಪರಿಷತ್ತು ರಚಿಸತಕ್ಕದ್ದು ಹಾಗೂ ವ್ಯವಸ್ಥಾಪನಾ ಮಂಡಳಿಯು ಅನುಮೋದಿಸತಕ್ಕದ್ದು.

37. **ವಿನಿಯಮಗಳ ತಿದ್ದುಪಡಿಗೆ ಅಧಿಕಾರ.**– ವ್ಯವಸ್ಥಾಪನಾ ಮಂಡಳಿಯ ಅನುಮೋದನೆಯೊಡನೆ ಶೈಕ್ಷಣಿಕ ಪರಿಷತ್ತು ಹೊಸ ವಿನಿಯಮಗಳನ್ನು ಅಥವಾ ಹೆಚ್ಚುವರಿ ವಿನಿಯಮಗಳನ್ನು ರಚಿಸಬಹುದು ಅಥವಾ ವಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ನಿರಸನಗೊಳಿಸಬಹುದು.

38. **ಶುಲ್ಕ ನಿಗದಿ.**– (1) 9ನೇ ಪ್ರಕರಣದ ಪರಂತುಕದ ಅಡಿಯಲ್ಲಿ ರಾಜ್ಯ ಸರ್ಕಾರದ ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡಲಾದ ಪ್ರವೇಶಗಳಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳಲ್ಲಿನ ಶೇಕಡಾ ನಲವತ್ತರಷ್ಟು ಪ್ರವೇಶಗಳ ಸಂಬಂಧದಲ್ಲಿ ಶುಲ್ಕವು ಸರ್ಕಾರ ಮತ್ತು ವಿಶ್ವವಿದ್ಯಾಲಯವು ಸಮ್ಮತಾಭಿಪ್ರಾಯದ ಒಪ್ಪಂದದ ಪ್ರಕಾರ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) ಅಧಿನಿಯಮ, 2006ರ (2006ರ ಕರ್ನಾಟಕ ಅಧಿನಿಯಮ 8) ಅನುಸಾರವಾಗಿ ಸರ್ಕಾರಿ ಸೀಟುಗಳಿಗಾಗಿ ರಾಜ್ಯ ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸಿದಂತೆ ಇರತಕ್ಕದ್ದು.

(2) ವಿಶ್ವವಿದ್ಯಾಲಯದ ಇತರ ಸೀಟುಗಳಿಗೆ ಸಂಬಂಧಿಸಿದಂತೆ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳು (ಪ್ರವೇಶ, ನಿಯಂತ್ರಣ ಮತ್ತು ಶುಲ್ಕ ನಿಗದಿ) ಅಧಿನಿಯಮ, 2006ರ (2006ರ ಕರ್ನಾಟಕ ಅಧಿನಿಯಮ 8) 6ನೇ ಪ್ರಕರಣದ ಉಪಬಂಧಗಳ ಅನುಸಾರವಾಗಿ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರ ಅಧ್ಯಕ್ಷತೆಯ ಅಡಿಯಲ್ಲಿ ರಚಿಸಲಾದ ಶುಲ್ಕ ನಿಯಂತ್ರಣ ಸಮಿತಿಯ ಮೂಲಕ ಶುಲ್ಕವನ್ನು ನಿಗದಿಪಡಿಸತಕ್ಕದ್ದು. ಈ ಪ್ರಕರಣದ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವನ್ನು ಖಾಸಗಿ ಅನುದಾನರಹಿತ ವೃತ್ತಿಪರ ಶಿಕ್ಷಣ ಸಂಸ್ಥೆ ಎಂದು ಭಾವಿಸತಕ್ಕದ್ದು.

## ಅಧ್ಯಾಯ – VI

### ಸಂಕೀರ್ಣ

**39. ನೌಕರರ ಸೇವಾ ಷರತ್ತುಗಳು.–** (1) ಪರಿನಿಯಮಗಳ ಮತ್ತು ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಥವಾ ನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳು, ಯಾವುದಾದರೂ ಇದ್ದಲ್ಲಿ, ಅವುಗಳಿಗೆ ಒಳಪಟ್ಟು ಪ್ರತಿಯೊಬ್ಬ ನೌಕರನು ಲಿಖಿತ ಕರಾರಿನ ಅಡಿಯಲ್ಲಿ ನೇಮಕಗೊಳ್ಳತಕ್ಕದ್ದು ಮತ್ತು ಅದನ್ನು ವಿಶ್ವವಿದ್ಯಾಲಯದಲ್ಲಿ ಇಟ್ಟುಕೊಳ್ಳತಕ್ಕದ್ದು ಹಾಗೂ ಅದರ ಪ್ರತಿಯನ್ನು ಸಂಬಂಧಪಟ್ಟ ನೌಕರನಿಗೆ ನೀಡತಕ್ಕದ್ದು.

(2) ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಕಾರ್ಯವಿಧಾನಗಳ ಮೂಲಕ ನಿಯಂತ್ರಿಸತಕ್ಕದ್ದು.

(3) ಕರಾರಿನಿಂದಾಗಿ ವಿಶ್ವವಿದ್ಯಾಲಯ ಮತ್ತು ನೌಕರನ ಮಧ್ಯದಲ್ಲಿ ಉದ್ಭವಿಸಬಹುದಾದ ಯಾವುದೇ ವಿವಾದವನ್ನು, ಲಿಖಿತ ಕರಾರಿನಲ್ಲಿ ಉಪಬಂಧಿಸಿದ ವಿಧಾನದಲ್ಲಿ ಹಾಗೂ ಪರಿನಿಯಮಗಳ ಅನುಸಾರವಾಗಿ ಪರಿಹರಿಸತಕ್ಕದ್ದು.

**40. ಮೇಲ್ಮನವಿ ಹಕ್ಕು.–** ವಿಶ್ವವಿದ್ಯಾಲಯವು ತನ್ನ ನೌಕರರ ಅಥವಾ ವಿದ್ಯಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡ ಸಂದರ್ಭದಲ್ಲಿ, ಬಾಧಿತ ನೌಕರ ಅಥವಾ ವಿದ್ಯಾರ್ಥಿಗಳು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಮೇಲ್ಮನವಿಯನ್ನು ಅಂಥ ಪ್ರಾಧಿಕಾರಕ್ಕೆ ಸಲ್ಲಿಸುವ ಹಕ್ಕನ್ನು ಹೊಂದಿರತಕ್ಕದ್ದು.

**41. ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿ .–** ವಿಶ್ವವಿದ್ಯಾಲಯವು, ತನ್ನ ನೌಕರರ ಪ್ರಯೋಜನಕ್ಕಾಗಿ. ಪರಿನಿಯಮಗಳು ಮತ್ತು ಜಾರಿಯಲ್ಲಿರುವ ಕಾನೂನುಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿಯನ್ನು ರಚಿಸತಕ್ಕದ್ದು ಹಾಗೂ ಅಂಥ ವಿಮಾ ಯೋಜನೆಗಳನ್ನು ಒದಗಿಸತಕ್ಕದ್ದು.

**42. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಇತರ ಸಂಸ್ಥೆಯ ಸದಸ್ಯನಾಗಿ ಯಾವೊಬ್ಬ ವ್ಯಕ್ತಿಯು ಸೂಕ್ತವಾಗಿ ಆಯ್ಕೆಯಾಗಿದ್ದಾನೆಯೇ ಅಥವಾ ನೇಮಕಗೊಂಡಿದ್ದಾನೆಯೇ ಅಥವಾ ಅದಕ್ಕೆ ಅರ್ಹನಾಗಿದ್ದಾನೆಯೇ ಎಂಬ ಯಾವುದೇ ಪ್ರಶ್ನೆ ಉದ್ಭವಿಸಿದರೆ, ಆ ವಿಷಯವನ್ನು ತೀರ್ಮಾನಕ್ಕಾಗಿ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**43. ಸಮಿತಿಗಳ ರಚನೆ.–** 22ನೇ ಪ್ರಕರಣದಲ್ಲಿ ನಮೂದಿಸಿದ ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಅಧಿಕಾರವನ್ನು ಹೊಂದಿರುವ ಅಂಥ ಸದಸ್ಯರನ್ನು ಒಳಗೊಂಡ ಅಂಥ ಪ್ರಾಧಿಕಾರದ ಒಂದು ಸಮಿತಿಯನ್ನು ರಚಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**44. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಂಸ್ಥೆಯ ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ಪೈಕಿ ಯಾವುದೇ ಸ್ಥಾನವು ಆಕಸ್ಮಿಕವಾಗಿ ಖಾಲಿಯಾದರೆ, ಯಾರ ಸ್ಥಾನವು ಖಾಲಿಯಾಗಿ ತುಂಬಬೇಕಾಗಿ ಬಂದಿದೆಯೋ ಆ ಸದಸ್ಯನನ್ನು ಯಾವ ರೀತಿಯಲ್ಲಿ ಆರಿಸಲಾಗಿತ್ತೋ ಅದೇ ರೀತಿಯಲ್ಲಿ ಹೊಸ ಸದಸ್ಯನನ್ನು ಆರಿಸಿ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ಖಾಲಿ ಸ್ಥಾನವನ್ನು ಭರ್ತಿ ಮಾಡಿದ ವ್ಯಕ್ತಿಯು ಆತನು ಯಾವ ಸದಸ್ಯನ ಸ್ಥಾನದಲ್ಲಿ ಭರ್ತಿಯಾಗಿರುವನೋ ಆ ಸದಸ್ಯನು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯನಾಗಿ ಉಳಿಯುತ್ತಿದ್ದ ಬಾಕಿ ಅವಧಿಯವರೆಗೆ ಮಾತ್ರ ಸದಸ್ಯನಾಗಿರತಕ್ಕದ್ದು.

**45. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.–** ಈ ಅಧಿನಿಯಮ ಅಥವಾ ಪರಿನಿಯಮಗಳು ಅಥವಾ ನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ವಿಶ್ವವಿದ್ಯಾಲಯದ ಯಾವೊಬ್ಬ ಅಧಿಕಾರಿ ಅಥವಾ ಇತರ ನೌಕರರ ವಿರುದ್ಧ ಯಾವುದೇ ದಾವೆ ಅಥವಾ ಇತರ ಕಾನೂನು ವ್ಯವಹರಣೆಗಳನ್ನು ನಡೆಸಲು ಅವಕಾಶ ಇರತಕ್ಕದ್ದಲ್ಲ.

**46. ತಾತ್ಕಾಲಿಕ ಉಪಬಂಧಗಳು.–** -ಈ ಅಧಿನಿಯಮ ಮತ್ತು ಪರಿನಿಯಮಗಳ ಯಾವುದೇ ಇತರ ಉಪಬಂಧಗಳಲ್ಲಿ ಏನೇ ಇದ್ದರೂ,–

(i) ಮೊದಲ ಕುಲಪತಿ ಮತ್ತು ಸಹಕುಲಪತಿ, ಯಾರಾದರೂ ಇದ್ದರೆ, ಅವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(ii) ಮೊದಲ ಕುಲಸಚಿವರನ್ನು ಮತ್ತು ಮೊದಲ ಹಣಕಾಸು ಅಧಿಕಾರಿಯವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು; ಮತ್ತು

(iii) ಮೊದಲ ವ್ಯವಸ್ಥಾಪನ ಮಂಡಳಿ, ಮೊದಲ ಹಣಕಾಸು ಸಮಿತಿ, ಮೊದಲ ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಹಾಗೂ ಮೊದಲ ಶೈಕ್ಷಣಿಕ ಪರಿಷತ್ತನ್ನು ಕುಲಾಧಿಪತಿಯವರು ರಚಿಸತಕ್ಕದ್ದು.

**47. ಶಾಶ್ವತ ಶಾಸನಬದ್ಧ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಕನಿಷ್ಠ ಇಪ್ಪತ್ತೈದು ಕೋಟಿ ರೂಪಾಯಿಗಳನ್ನುಳ್ಳ ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು ಇದರ ಪೈಕಿ ಕನಿಷ್ಠ ಹದಿನೈದು ಕೋಟಿ ರೂಪಾಯಿಗಳು ನಗದು ರೂಪದಲ್ಲಿ ಮತ್ತು ಇನ್ನುಳಿದದ್ದು ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ಇರತಕ್ಕದ್ದು ಮತ್ತು ಇದನ್ನು ತಾನಾಗಿಯೆ ಹೆಚ್ಚಿಸಬಹುದಾಗಿದ್ದು ಆದರೆ ಕಡಿಮೆ ಮಾಡತಕ್ಕದ್ದಲ್ಲ:

ಪರಂತು, ಬೆಂಗಳೂರು ಅಥವಾ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊರಗಿರುವ ವಿಶ್ವವಿದ್ಯಾಲಯದ ಸಂದರ್ಭದಲ್ಲಿ ಕನಿಷ್ಠ ಹತ್ತು ಕೋಟಿ ರೂಪಾಯಿಗಳು ನಗದು ರೂಪದಲ್ಲಿರತಕ್ಕದ್ದು ಮತ್ತು ಉಳಿದ ಐದು ಕೋಟಿ ರೂಪಾಯಿಗಳು ಬ್ಯಾಂಕ್ ಗ್ಯಾರಂಟಿಯ ರೂಪದಲ್ಲಿರತಕ್ಕದ್ದು.

(2) ವಿಶ್ವವಿದ್ಯಾಲಯವು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಹಣವನ್ನು ಹೂಡಲು ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯವು ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಗೆ ವರ್ಗಾವಣೆ ಮಾಡಬಹುದು. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನೂ ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(4) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಿದ ವರಮಾನದ ಶೇಕಡಾ ಎಪ್ಪತ್ತೈದರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತೈದರಷ್ಟನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಯಲ್ಲಿ ಪುನ: ತೊಡಗಿಸತಕ್ಕದ್ದು.

**48. ವಿಶ್ವವಿದ್ಯಾಲಯದ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ನಿಧಿಗಳನ್ನು ಒಳಗೊಂಡ ವಿಶ್ವವಿದ್ಯಾಲಯದ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದು ಕಾಲಕಾಲಕ್ಕೆ ಸ್ವೀಕರಿಸಬಹುದಾದ ದೇಣಿಗೆಗಳು ಮತ್ತು ಇತರ ನಿಧಿಗಳನ್ನು ಒಳಗೊಂಡಿರತಕ್ಕದ್ದು.

(2) ವಿಶ್ವವಿದ್ಯಾಲಯವು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ವಿಶ್ವವಿದ್ಯಾಲಯದ ದತ್ತಿನಿಧಿಯನ್ನು ಹೂಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯ ದತ್ತಿ ನಿಧಿಯು, ವಿಶ್ವವಿದ್ಯಾಲಯವು ತನ್ನ ಸಾಮಾಜಿಕ ಧ್ಯೇಯೋದ್ದೇಶಗಳನ್ನು ನೆರವೇರಿಸುವ ಸಂದರ್ಭದಲ್ಲಿ ಮತ್ತು/ಅಥವಾ ಮುಂಗಾಣದ ಸನ್ನಿವೇಶದಲ್ಲಿ ಉದ್ಭವಿಸಬಹುದಾದ ಹಣಕಾಸು ಸವಾಲುಗಳಿಂದ ತನ್ನನ್ನು ರಕ್ಷಿಸಿಕೊಳ್ಳುವುದಕ್ಕಾಗಿ, ಸ್ವಇಚ್ಛೆಯಿಂದ ನಿರ್ವಹಿಸಿಕೊಂಡು ಬರಲು ಮತ್ತು ಜವಾಬ್ದಾರಿಯಿಂದ ಹಣ ಹೂಡಿಕೆ ಮಾಡಲು ಇಚ್ಛೆಯುಳ್ಳವರಾಗಿ ಸ್ವಯಂ ವಿಧಿಸಿಕೊಂಡ ನಿಧಿಯಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಗೆ ವರ್ಗಾಯಿಸಬಹುದು. ವಿಶ್ವವಿದ್ಯಾಲಯದ ಸಮಾಪಣೆಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನು ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(5) ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಬರುವ ವರಮಾನದ ಶೇಕಡಾ ಎಂಭತ್ತರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸದ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತರಷ್ಟನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**49. ಸಾಮಾನ್ಯ ನಿಧಿ.**– (1) ವಿಶ್ವವಿದ್ಯಾಲಯವು, ಒಂದು ಸಾಮಾನ್ಯ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯವು ವಿಧಿಸಬಹುದಾದ ಎಲ್ಲಾ ಶುಲ್ಕಗಳು;

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವುದೇ ಇತರ ಮೂಲದಿಂದ ಸ್ವೀಕರಿಸಲಾದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ದೇಣಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು ಅಥವಾ ವಂತಿಗೆಗಳು;

(2) ಸಾಮಾನ್ಯ ನಿಧಿಗೆ ಜಮಾ ಮಾಡುವ ನಿಧಿಗಳನ್ನು ವಿಶ್ವವಿದ್ಯಾಲಯದ ಎಲ್ಲಾ ಆವರ್ತಕ ವೆಚ್ಚಗಳನ್ನು ಭರಿಸಲು ಉಪಯೋಗಿಸಕೊಳ್ಳತಕ್ಕದ್ದು.

**50. ಅಭಿವೃದ್ಧಿ ನಿಧಿ.**– (1) ವಿಶ್ವವಿದ್ಯಾಲಯವು, ಒಂದು ಅಭಿವೃದ್ಧಿ ನಿಧಿಯನ್ನು ಸಹ ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ವಿದ್ಯಾರ್ಥಿಗಳಿಂದ ವಿಧಿಸಬಹುದಾದ ಅಭಿವೃದ್ಧಿ ಶುಲ್ಕಗಳು;

(ii) ವಿಶ್ವವಿದ್ಯಾಲಯದ ಅಭಿವೃದ್ಧಿಯ ಉದ್ದೇಶಗಳಿಗಾಗಿ ಯಾವುದೇ ಇತರ ಮೂಲಗಳಿಂದ ಸ್ವೀಕರಿಸಿದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ವಂತಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು ಅಥವಾ ವಂತಿಗೆಗಳು; ಮತ್ತು

(v) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಲಾದ ಎಲ್ಲಾ ವರಮಾನಗಳು.

(2) ಅಭಿವೃದ್ಧಿ ನಿಧಿಗೆ ಕಾಲಕಾಲಕ್ಕೆ ಜಮಾ ಮಾಡಿದ ನಿಧಿಯನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಉಪಯೋಗಿಸಕೊಳ್ಳತಕ್ಕದ್ದು.

**51. ನಿಧಿಗಳ ನಿರ್ವಹಣೆ.**– 47, 48, 49 ಮತ್ತು 50ನೇ ಪ್ರಕರಣಗಳಡಿಯಲ್ಲಿ ಸ್ಥಾಪಿಸಲಾದ ನಿಧಿಗಳನ್ನು ಪ್ರಬಂಧಕ ಮಂಡಳಿಯ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ನಿಯಂತ್ರಿಸತಕ್ಕದ್ದು ಹಾಗೂ ನಿರ್ವಹಿಸತಕ್ಕದ್ದು.

**52. ವಾರ್ಷಿಕ ವರದಿ.**– (1) ವಿಶ್ವವಿದ್ಯಾಲಯದ ವಾರ್ಷಿಕ ವರದಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ಅದರ ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಪ್ರಬಂಧಕ ಮಂಡಳಿಯು ವಾರ್ಷಿಕ ವರದಿಯನ್ನು ತನ್ನ ಸಭೆಯಲ್ಲಿ ಪರಿಗಣಿಸತಕ್ಕದ್ದು ಹಾಗೂ ಅದನ್ನು ಮಾರ್ಪಾಡುಗಳೊಡನೆ ಅಥವಾ ಮಾರ್ಪಾಡುಗಳಿಲ್ಲದೆ ಅನುಮೋದಿಸಬಹುದು.

(3) ಪ್ರಬಂಧಕ ಮಂಡಳಿಯು ಸೂಕ್ತವಾಗಿ ಅನುಮೋದಿಸಿದ ವಾರ್ಷಿಕ ವರದಿಯ ಒಂದು ಪ್ರತಿಯನ್ನು ಪ್ರತಿವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ಡಿಸೆಂಬರ್ 31ಕ್ಕೆ ಮೊದಲು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**53. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.**– (1) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕ ಪತ್ರ ಮತ್ತು ಜಮಾ ಖರ್ಚು ಪಟ್ಟಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯಕ್ಕೆ ಎಲ್ಲಾ ಮೂಲಗಳಿಂದ ಪ್ರಾಪ್ತವಾಗುವ ಅಥವಾ ಸ್ವೀಕರಿಸಲಾಗುವ ಎಲ್ಲಾ ನಿಧಿಗಳು ಹಾಗೂ ವಿತರಿಸಿದ ಅಥವಾ ಸಂದಾಯ ಮಾಡಿದ ಎಲ್ಲಾ ಮೊಬಲಗುಗಳನ್ನು ವಿಶ್ವವಿದ್ಯಾಲಯವು ನಿರ್ವಹಿಸುವ ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕಪತ್ರಗಳನ್ನು ಪ್ರತಿ ವರ್ಷವೂ ಭಾರತದ ಚಾರ್ಟೆಡ್ ಅಕೌಂಟೆಂಟ್‌ಗಳ ಸಂಸ್ಥೆಯ ಸದಸ್ಯರಾಗಿರುವ ಒಬ್ಬ ಲೆಕ್ಕಪರಿಶೋಧಕರಿಂದ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಲೆಕ್ಕಪರಿಶೋಧನಾ ವರದಿಯೊಡನೆ, ಪ್ರತಿ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ನವೆಂಬರ್ 30ಕ್ಕೆ ಮೊದಲು ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(4) ವಾರ್ಷಿಕ ಲೆಕ್ಕಪತ್ರಗಳು, ಜಮಾಖರ್ಚು ಪಟ್ಟಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಪ್ರಬಂಧಕ ಮಂಡಳಿಯು ತನ್ನ ಸಭೆಯಲ್ಲಿ ಪರ್ಯಾಲೋಚಿಸತಕ್ಕದ್ದು ಮತ್ತು ಪ್ರಬಂಧಕ ಮಂಡಳಿಯು ಅದನ್ನು ತನ್ನ ಅಭಿಪ್ರಾಯಗಳೊಡನೆ ಸಂದರ್ಶಕರಿಗೆ ಹಾಗೂ ಸರ್ಕಾರಕ್ಕೆ ಪ್ರತಿ ವರ್ಷದ ಡಿಸೆಂಬರ್ 31ಕ್ಕೆ ಮೊದಲು ಕಳುಹಿಸತಕ್ಕದ್ದು.

(5) ಲೆಕ್ಕಪರಿಶೋಧಕರ ವರದಿಯಲ್ಲಿ ಯಾವುದೇ ಮುಖ್ಯ ಬದಲಾವಣೆ ಇದ್ದ ಸಂದರ್ಭದಲ್ಲಿ, ಅವುಗಳನ್ನು ಸರಿಪಡಿಸಲು, ರಾಜ್ಯ ಸರ್ಕಾರವು ವಿಶ್ವವಿದ್ಯಾಲಯಕ್ಕೆ ನಿರ್ದೇಶನಗಳನ್ನು ಹೊರಡಿಬಹುದು ಮತ್ತು ಅಂಥ ನಿರ್ದೇಶನಗಳು ವಿಶ್ವವಿದ್ಯಾಲಯದ ಮೇಲೆ ಬಂಧನಕಾರಿಯಾಗಿರತಕ್ಕದ್ದು.

**54. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ.**– ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಮಿತಿಯ ಯಾವುದೇ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ ಅಥವಾ ಗೊತ್ತುವಳಿಯು ಅಥವಾ ವಿಶ್ವವಿದ್ಯಾಲಯದ ಸ್ವಾಧೀನದಲ್ಲಿರುವ ಇತರ ದಾಖಲೆಗಳು ಅಥವಾ ವಿಶ್ವವಿದ್ಯಾಲಯವು ಯುಕ್ತವಾಗಿ ನಿರ್ವಹಿಸುವ ಯಾವುದೇ ರಿಜಿಸ್ಟರ್‌ನಲ್ಲಿಯ ಯಾವುದೇ ನಮೂದುಗಳ ಪ್ರತಿಯನ್ನು, ಅದರ ಮೇಲೆ ಕುಲಸಚಿವರು ಪ್ರಮಾಣೀಕರಿಸಿದ್ದರೆ, ಅದನ್ನು ಅಂಥ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ, ಗೊತ್ತುವಳಿ ಅಥವಾ ದಾಖಲೆ ಅಥವಾ ರಿಜಿಸ್ಟರ್‌ನಲ್ಲಿ ಇರುವ ನಮೂದನ್ನು ಮೇಲ್ನೋಟದ ಸಾಕ್ಷ್ಯವೆಂಬುದಾಗಿ ಸ್ವೀಕರಿಸತಕ್ಕದ್ದು ಮತ್ತು ವಿಷಯಗಳ ಸಾಕ್ಷಿಯಾಗಿ ಅಂಗೀಕರಿಸತಕ್ಕದ್ದು ಹಾಗೂ ಮೂಲ ದಾಖಲೆಗಳನ್ನೇ ಸಲ್ಲಿಸಿದ್ದರೆ ಅದನ್ನು, ದಾಖಲಿಸಿರುವ ವಿಷಯಗಳು ಮತ್ತು ವಹಿವಾಟುಗಳ ಸಾಕ್ಷ್ಯವಾಗಿ ಅಂಗೀಕರಿಸಲಾಗುತ್ತಿತ್ತೋ, ಅದೇ ರೀತಿಯಲ್ಲಿ ಇವನ್ನೂ ಸಾಕ್ಷ್ಯವಾಗಿ ಅಂಗೀಕರಿಸತಕ್ಕದ್ದು.

**55. ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ.**– ರಾಜ್ಯಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಥವಾ ಅದರಲ್ಲಿ ಇರುವ ಯಾವುವೇ ಉಪಬಂಧಗಳನ್ನು ಅಥವಾ ಆದರಡಿಯಲ್ಲಿ ರಚಿಸಿದ ಯಾವುವೇ ನಿಯಮಗಳು ಅಥವಾ ಆದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿರ್ದೇಶನ ನೀಡುವುದು ಅವಶ್ಯವೆಂದು ಅಥವಾ ಉಚಿತವೆಂದು ಅಭಿಪ್ರಾಯಪಟ್ಟಲ್ಲಿ ಅದು ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ ಅಥವಾ ಸಂದರ್ಭಾನುಸಾರವಾಗಿ ವ್ಯವಸ್ಥಾಪನಾ ಮಂಡಳಿಯು ಅಂಥ ಪ್ರತಿಯೊಂದು ನಿರ್ದೇಶನವನ್ನು ಪಾಲಿಸತಕ್ಕದ್ದು.

**56. ದಂಡಗಳು.**– (1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿತವಾದ ನಿಯಮಗಳು ಉಪಬಂಧಗಳನ್ನು ಅಥವಾ ಯಾವುದೇ ಪರೀಕ್ಷಾ ವಿಷಯಗಳನ್ನು ಅಥವಾ ಪದವಿಗಳನ್ನು ನೀಡುವುದಕ್ಕೆ ಅಥವಾ ಅಂಕಪಟ್ಟಿಗಳನ್ನು ನೀಡುವುದಕ್ಕೆ ಸಂಬಂಧಪಟ್ಟ ವಿಷಯಗಳಲ್ಲಿ ಉಲ್ಲಂಘನೆಗಳನ್ನು ಮಾಡುವ ಯಾವೊಬ್ಬ ವ್ಯಕ್ತಿಯು, ಅಪರಾಧ ನಿರ್ಣಯವಾದ ಮೇಲೆ, ಐವತ್ತು ಸಾವಿರ ರೂಪಾಯಿಗಳಿಗೆ ಕಡಿಮೆಯಲ್ಲದ ಆದರೆ ಹತ್ತು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಆರು ತಿಂಗಳ ಅವಧಿಗಿಂತ ಕಡಿಮೆಯಲ್ಲದ ಆದರೆ ಎರಡು ವರ್ಷಗಳ ಅವಧಿಯವರೆಗೆ ವಿಸ್ತರಿಸಬಹುದಾದ ಕಾರಾವಾಸದಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು:

ಪರಂತು, ಅಪರಾಧವನ್ನು ಎಸಗುವಲ್ಲಿ ವಿಶ್ವವಿದ್ಯಾಲಯವೂ ಸಹ ಒಳಗೊಂಡಿರುವಲ್ಲಿ, ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಈ ಅಧಿನಿಯಮದ ಅಡಿಯಲ್ಲಿ ಮಂಜೂರು ಮಾಡಲಾದ ಅನುಮತಿ ಪತ್ರವನ್ನು ಹಿಂತೆಗೆದುಕೊಳ್ಳತಕ್ಕದ್ದು.

(2) ಈ ಪ್ರಕರಣದ ಅಡಿಯಲ್ಲಿಯ ದಂಡವನ್ನು ಇತರ ಯಾವುದೇ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಲಾದ ದಂಡಕ್ಕೆ ಬಾಧಕವಾಗದಂತೆ ವಿಧಿಸಬಹುದು.

57. ಪ್ರವೇಶಿಸುವ ಮತ್ತು ಪರಿಶೋಧಿಸುವ ಅಧಿಕಾರ.– ಈ ಉದ್ದೇಶಕ್ಕಾಗಿ, ರಾಜ್ಯಸರ್ಕಾರದಿಂದ ಪ್ರಾಧಿಕೃತಗೊಳಿಸಿದ [illegible] ದರ್ಜೆಯ ಯಾವುದೇ ಅಧಿಕಾರಿಯು, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಶನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ 37) ಅಡಿಯಲ್ಲಿ ನಿರ್ದಿಷ್ಟಪಡಿಸಿರಬಹುದಾದ ಅಂಥ ಷರತ್ತುಗಳಿಗೆ ಒಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ, ಆ ಅಧಿನಿಯಮದ 9ನೇ ಪ್ರಕರಣದ ಅಡಿಯಲ್ಲಿ ಉಪಬಂಧಿಸಲಾದಂತಹವೇ ಅಧಿಕಾರಗಳನ್ನು ಚಲಾಯಿಸಲು ಮತ್ತು ಪ್ರಕಾರ್ಯಗಳನ್ನು ನೆರವೇರಿಸಲು ಅಧಿಕೃತನಾದ ಅಧಿಕಾರಿ ಎಂಬುದಾಗಿ ಭಾವಿಸತಕ್ಕದ್ದು.

58. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ನಿರ್ದೇಶನವನ್ನು ನೀಡುವ ಅಧಿಕಾರ.– (1) ವಿಶ್ವವಿದ್ಯಾಲಯವು ತನ್ನ ರಚನೆ ಅಥವಾ ನಿಗಮನವನ್ನು ನಿಯಂತ್ರಿಸುವ ಕಾನೂನಿಗೆ ಅನುಸಾರವಾಗಿ ತನ್ನ ಸಮಾಪನವನ್ನು ಉದ್ದೇಶಿಸಿದ್ದಲ್ಲಿ, ಅದು ಕನಿಷ್ಠ ಆರು ತಿಂಗಳ ಲಿಖಿತ ಪೂರ್ವ ಸೂಚನೆಯನ್ನು (ನೋಟಿಸು) ಸರ್ಕಾರಕ್ಕೆ ನೀಡತಕ್ಕದ್ದು.

(2) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಈ ಕೆಳಗಿನವುಗಳ ಬಗ್ಗೆ, ಎಂದರೆ:-

(i) ಪದವಿಯನ್ನು ನೀಡುವುದಕ್ಕಾಗಿ ಬೋಧನೆಯ ಗುಣಮಟ್ಟ;

(ii) ಶಿಕ್ಷಣದ ಗುಣಮಟ್ಟ;

(iii) ಉನ್ನತ ಶಿಕ್ಷಣದ ವ್ಯಾಪಾರೀಕರಣವನ್ನು ತಡೆಗಟ್ಟುವುದು;

(iv) ಅಧಿನಿಯಮದ ಉಪಬಂಧಗಳ ಉಲ್ಲಂಘನೆಯ ಬಗ್ಗೆ, ಯಾವುದಾದರೂ ಇದ್ದಲ್ಲಿ,

– ಇವುಗಳ ಬಗ್ಗೆ ಎರಡು ವರ್ಷಗಳಲ್ಲಿ ಕನಿಷ್ಠ ಒಂದು ಬಾರಿಯಾದರೂ ಪರಿವೀಕ್ಷಣೆಯನ್ನು ನಡೆಸತಕ್ಕದ್ದು ಮತ್ತು ಸರ್ಕಾರಕ್ಕೆ ವರದಿಯನ್ನು ಕಳುಹಿಸತಕ್ಕದ್ದು.

(3) ದುರ್ವ್ಯವಹರಣೆ, ದುರಾಡಳಿತ ಮತ್ತು ಅಶಿಸ್ತು ಆಗಿದೆ ಎಂಬುದನ್ನು ಗುರುತಿಸಿದರೆ, ಸರ್ಕಾರವು, ವಿಶ್ವವಿದ್ಯಾಲಯದ ಆಡಳಿತವರ್ಗದವರಿಗೆ ಆಡಳಿತವನ್ನು ಸರಿಪಡಿಸಬೇಕೆಂದು ನಿರ್ದೇಶನಗಳನ್ನು ನೀಡತಕ್ಕದ್ದು. ನಿಯಮಿಸಬಹುದಾದ ಅಂಥ ಅವಧಿಯೊಳಗೆ ಆ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುವ ಹಕ್ಕು ಸರ್ಕಾರದಲ್ಲಿ ನಿಹಿತವಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ವಿಧಾನವು, ಸರ್ಕಾರವು ಈ ಸಂಬಂಧದಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು:

ಪರಂತು, ವಿಶ್ವವಿದ್ಯಾಲಯವು ತನ್ನ ಕಾರಣಗಳನ್ನು ಹೇಳಿಕೊಳ್ಳಲು ಸಮಂಜಸ ಅವಕಾಶಗಳನ್ನು ನೀಡಿದ ಹೊರತು ಅಂಥ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

(5) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೋಟಿಸನ್ನು ಸ್ವೀಕರಿಸಿದ ಮೇಲೆ, ಸರ್ಕಾರವು ಸಂಬಂಧಿಸಿದ ನಿಯಂತ್ರಣಾ ಪ್ರಾಧಿಕಾರದೊಡನೆ ಸಮಾಲೋಚಿಸಿ, ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ಅಥವಾ ವ್ಯಾಸಂಗ ಕ್ರಮವನ್ನು ಪರಿಸಮಾಪನಗೊಳಿಸಲು ಉದ್ದೇಶಿಸಿದ ದಿನಾಂಕದಿಂದ, ವಿಶ್ವವಿದ್ಯಾಲಯದಲ್ಲಿ ನಿಯತ ವ್ಯಾಸಂಗ ಕ್ರಮಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕೊನೆಯ ತಂಡ (ಬ್ಯಾಚ್) ತನ್ನ ವ್ಯಾಸಂಗ ಕ್ರಮವನ್ನು ಮುಗಿಸುವವರೆಗೆ ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು.

**59. ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು.**– (1) 58ನೇ ಪ್ರಕರಣದ (5)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ಅದರ ಆಡಳಿತಾತ್ಮಕ ವೆಚ್ಚಗಳನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ನೇಮಿಸಬಹುದಾದ ಅಂಥ ವಿಧಾನದಲ್ಲಿ ಭರಿಸತಕ್ಕದ್ದು.

(2) ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ವಿಶ್ವವಿದ್ಯಾಲಯದ ವೆಚ್ಚವನ್ನು ಭರಿಸಲು 47, 48, 49, ಮತ್ತು 50ನೇ ಪ್ರಕರಣಗಳ ಅಡಿಯಲ್ಲಿ ಉಲ್ಲೇಖಿಸಲಾದ ನಿಧಿಯು ಸಾಕಷ್ಟು ಇಲ್ಲದಿದ್ದಲ್ಲಿ, ಅಂಥ ವೆಚ್ಚವನ್ನು ಸರ್ಕಾರವು, ವಿಶ್ವವಿದ್ಯಾಲಯದ ಸ್ವತ್ತುಗಳು ಮತ್ತು ಆಸ್ತಿಗಳನ್ನು ವಿಲೇ ಮಾಡುವ ಮೂಲಕ ಭರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಸಮಾಪನೆಯು ದುರ್ವ್ಯವಹರಣೆ ಅಥವಾ ದುರಾಡಳಿತದ ಕಾರಣಗಳಿಗಾಗಿ ಆಗಿದ್ದರೆ, ಸರ್ಕಾರವು ಅಂಥ ದುರ್ವ್ಯವಹಾರಕ್ಕೆ ಅಥವಾ ದುರಾಡಳಿತಕ್ಕೆ ಹೊಣೆಯಾಗಿರುವ ವ್ಯಕ್ತಿಗಳನ್ನು ಗುರುತಿಸುವ ಮತ್ತು ಅವರ ಮೇಲೆ ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ದಂಡನೆಯನ್ನು ವಿಧಿಸಲು ಸ್ವತಂತ್ರವಾಗಿರತಕ್ಕದ್ದು.

**60. ತೊಂದರೆಗಳ ನಿವಾರಣೆಗೆ ಅಧಿಕಾರ.**– (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಅಥವಾ ಆದೇಶದ ಮೂಲಕ ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಐದು ವರ್ಷಗಳು ಮುಕ್ತಾಯವಾದ ತರುವಾಯ ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಅಧಿಸೂಚನೆ ಅಥವಾ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು ಅದನ್ನು ರಚಿಸಿದ ತರುವಾಯ ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

**61. ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ.**– (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಉಭಯ ಸದನಗಳು ಒಪ್ಪಿದರೆ ತದನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ದತಿಯು ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವನ್ನು ಉಂಟುಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಕೆ.ದ್ವಾರಕನಾಥ್ ಬಾಬು**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) ಪ್ರತಿಗಳು: 100

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ - IV-A | ಬೆಂಗಳೂರು, ಬುಧವಾರ, ಫೆಬ್ರವರಿ ೨೭, ೨೦೧೩ (ಫಾಲ್ಗುಣ ೮, ಶಕ ವರ್ಷ ೧೯೩೪) | ನಂ. ೫೨೭ |
|---|---|---|
| Part - IV-A | Bangalore, Wednesday, February 27, 2013 (Phalguna 8, Shaka Varsha 1934) | No. 527 |


## ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ

## ಅಧಿಸೂಚನೆ

**ಸಂಖ್ಯೆ: ಸಂವ್ಯಶಾಇ 84 ಶಾಸನ 2012, ಬೆಂಗಳೂರು, ದಿನಾಂಕ: 27-02-2013**

ಅಮೃತ ಸಿಂಚನ ಆಧ್ಯಾತ್ಮಿಕ ವಿಶ್ವವಿದ್ಯಾಲಯ ವಿಧೇಯಕ, 2012- ಇದಕ್ಕೆ 2013ರ ಫೆಬ್ರವರಿ ತಿಂಗಳ ಇಪ್ಪತ್ತೈದನೇ ದಿನಾಂಕದಂದು ಘನತೆವೆತ್ತ ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2013ರ ಕರ್ನಾಟಕ ಅಧಿನಿಯಮ ಸಂಖ್ಯೆ: 21 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

## 2013 ರ ಕರ್ನಾಟಕ ಅಧಿನಿಯಮ ಸಂಖ್ಯೆ: 21

(2013ರ ಫೆಬ್ರವರಿ ಮಾಹೆಯ ಇಪ್ಪತ್ತೇಳನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಅಮೃತ ಸಿಂಚನ ಆಧ್ಯಾತ್ಮಿಕ ವಿಶ್ವವಿದ್ಯಾಲಯ ಅಧಿನಿಯಮ, 2012

(2013ರ ಫೆಬ್ರವರಿ ಮಾಹೆಯ ಇಪ್ಪತ್ತೈದನೇ ದಿನಾಂಕದಂದು ರಾಜ್ಯಪಾಲರ ಅನುಮತಿಯನ್ನು ಪಡೆಯಲಾಗಿದೆ)

ಮಾನ್ಯತೆ ಪಡೆದ ವಿವಿಧ ಪದ್ಧತಿಗಳ ರೂಪದಲ್ಲಿ ನಾಗರಿಕರಿಗೆ ವಾಸ್ತವಿಕ ಚಿಕಿತ್ಸೆಯ ಮೂಲಕ ಸುವ್ಯವಸ್ಥಿತ ಶಿಕ್ಷಣ, ಬೋಧನೆ, ತರಬೇತಿ, ಉಪಶಮನ ಪ್ರಕ್ರಿಯೆಯ ಮೂಲಕ, ಉಪಶಮನ ಪ್ರಕ್ರಿಯೆಯನ್ನು ಊರ್ಜಿತಗೊಳಿಸಿ ಪ್ರಾಚೀನ ಯೋಗಿಗಳು ನೀಡಿದ ಆಧ್ಯಾತ್ಮ ರೂಪ ಅಥವಾ ಆಧ್ಯಾತ್ಮಿಕ ಶಕ್ತಿಯಲ್ಲಿ ಆಧ್ಯಾತ್ಮಿಕ ಪರಂಪರೆ ಮತ್ತು ತತ್ಸಂಬಂಧಿ ವಲಯಗಳಲ್ಲಿ ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಉತ್ತೇಜಿಸಲು ಮತ್ತು ಕೈಗೊಳ್ಳಲು ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದಕ್ಕಾಗಿ ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಮಾನ್ಯತೆ ಪಡೆದ ವಿವಿಧ ಪದ್ಧತಿಗಳ ರೂಪದಲ್ಲಿ ನಾಗರಿಕರಿಗೆ ವಾಸ್ತವಿಕ ಚಿಕಿತ್ಸೆಯ ಮೂಲಕ ಸುವ್ಯವಸ್ಥಿತ ಶಿಕ್ಷಣ, ಬೋಧನೆ, ತರಬೇತಿ, ಉಪಶಮನ ಪ್ರಕ್ರಿಯೆಯ ಮೂಲಕ, ಉಪಶಮನ ಪ್ರಕ್ರಿಯೆಯನ್ನು ಊರ್ಜಿತಗೊಳಿಸಿ ಪ್ರಾಚೀನ ಯೋಗಿಗಳು ನೀಡಿದ ಆಧ್ಯಾತ್ಮ ರೂಪ ಅಥವಾ ಆಧ್ಯಾತ್ಮಿಕ ಶಕ್ತಿಯಲ್ಲಿ ಆಧ್ಯಾತ್ಮಿಕ ಪರಂಪರೆ ಮತ್ತು ತತ್ಸಂಬಂಧಿ ವಲಯಗಳಲ್ಲಿ ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಉತ್ತೇಜಿಸಲು ಮತ್ತು ಕೈಗೊಳ್ಳಲು ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೂರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

## ಅಧ್ಯಾಯ - I

## ಪ್ರಾರಂಭಿಕ

**1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಅಮೃತ ಸಿಂಚನ ಆಧ್ಯಾತ್ಮಿಕ ವಿಶ್ವವಿದ್ಯಾಲಯ ಅಧಿನಿಯಮ, 2012 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. ಪರಿಭಾಷೆಗಳು.-** ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) "ಶೈಕ್ಷಣಿಕ ಪರಿಷತ್ತು (ಅಕೆಡೆಮಿಕ್ ಕೌನ್ಸಿಲ್)" ಎಂದರೆ, 25ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿಸಲಾದ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು;

(ಬಿ) "ಕಾರ್ಯಸೂಚಿ ವಿಷಯಗಳು", ಎಂದರೆ, ಪರಿನಿಯಮಗಳಲ್ಲಿ ಹೆಸರಿಸಬಹುದಾದ ಮತ್ತು ಒಂದು ಸಭೆಯಲ್ಲಿ ಆ ವಿಷಯಗಳನ್ನು ಮತ್ತು ಕಲಾಪಗಳನ್ನು ಅನುಮೋದಿಸಬಹುದೆಂದು ತಮ್ಮ ಸಮ್ಮತಿ ಸೂಚಿಸಿ ಕುಲಾಧಿಪತಿಯವರು ಮುಂಚಿತವಾಗಿಯೇ ಲಿಖಿತ ಅನುಮೋದನೆಯನ್ನು ಕೊಟ್ಟಿದ್ದಾಗ ಮಾತ್ರವೇ ಸಂದರ್ಭಾನುಸಾರ ಪ್ರಬಂಧಕರ ಮಂಡಳಿ ಅಥವಾ ವ್ಯವಸ್ಥಾಪನಾ ಮಂಡಳಿ ಅಥವಾ ಯಾವುದೇ ಸಮಿತಿಯವರು ಕಾರ್ಯಸೂಚಿಯಲ್ಲಿ ಸೇರಿಸಬಹುದಾದ ಅಥವಾ ಸಭೆಯಲ್ಲಿ ಚರ್ಚೆಗೆ ತೆಗೆದುಕೊಂಡು ನಿರ್ಣಯವನ್ನು ಕೊಡಬಹುದಾದ ಎಲ್ಲಾ ವಿಷಯಗಳು ಮತ್ತು ಕಲಾಪಗಳು;

(ಸಿ) "ಪ್ರಬಂಧಕರ ಮಂಡಳಿ" ಎಂದರೆ, 23ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಪ್ರಬಂಧಕರ ಮಂಡಳಿ;

(ಡಿ) "ವ್ಯವಸ್ಥಾಪನಾ ಮಂಡಳಿ" ಎಂದರೆ, 24ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಆಡಳಿತ ಮಂಡಳಿ;

(ಇ) "ಕುಲಾಧಿಪತಿ", "ಕುಲಪತಿ", "ಸಹಕುಲಪತಿ" ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ ಮತ್ತು ಸಹಕುಲಪತಿ;

(ಎಫ್) "ಕ್ಯಾಂಪಸ್" ಎಂದರೆ, ಅದು ಎಲ್ಲಾದರೂ ಇರಲಿ ವಿಶ್ವವಿದ್ಯಾಲಯವು ಸ್ಥಾಪಿಸಿದ, ನಿರ್ವಹಿಸುವ ಒಂದು ಕ್ಯಾಂಪಸ್;

(ಜಿ) "ಸಮಿತಿಗಳು" ಎಂದರೆ, ಈ ಅಧಿನಿಯಮದಡಿಯಲ್ಲಿ ರೂಪಿಸಲಾದ ಸಮಿತಿಗಳು ಅಥವಾ ಸಂದರ್ಭಾನುಸಾರವಾಗಿ ವಿಶ್ವವಿದ್ಯಾಲಯದ ವಿವಿಧ ಕಾರ್ಯಕರ್ತರು ರಚಿಸಿರುವ ಸಮಿತಿಗಳು ಮತ್ತು ಅದರಲ್ಲಿ ನಾಮನಿರ್ದೇಶನ ಸಮಿತಿ, ಹಣಕಾಸು ಸಮಿತಿ, ದೂರಶಿಕ್ಷಣ ಸಮಿತಿ ಮತ್ತು ಅಂಥ ಇತರ ಸಮಿತಿಗಳು ಒಳಗೊಳ್ಳುತ್ತವೆ;

(ಎಚ್) "ಘಟಕ ಕಾಲೇಜು" ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುತ್ತಿರುವ ಒಂದು ಕಾಲೇಜು ಅಥವಾ ಸಂಸ್ಥೆ;

(ಐ) "ಹಣಕಾಸು ಸಮಿತಿ" ಎಂದರೆ, 27ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಹಣಕಾಸು ಸಮಿತಿ;

(ಜೆ) "ಸರ್ಕಾರ" ಎಂದರೆ, ಕರ್ನಾಟಕ ಸರ್ಕಾರ;

(ಕೆ) "ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳು" ಎಂದರೆ, ವಿಶ್ವವಿದ್ಯಾಲಯ ಅನುದಾನ ಆಯೋಗ, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು, ಭಾರತೀಯ ವೈದ್ಯಕೀಯ ಪರಿಷತ್ತು, ಭಾರತೀಯ ಔಷಧ ವಿಜ್ಞಾನ ಪರಿಷತ್ತು, ಭಾರತೀಯ ಕೃಷಿ ಸಂಶೋಧನಾ ಪರಿಷತ್ತು, ರಾಷ್ಟ್ರೀಯ ಮೌಲ್ಯಮಾಪನ ಮತ್ತು ಅಧಿಮಾನ್ಯತಾ ಪರಿಷತ್ತು, ರಾಷ್ಟ್ರೀಯ ಬೋಧಕ ಶಿಕ್ಷಣ ಪರಿಷತ್ತು, ದೂರಶಿಕ್ಷಣ ಪರಿಷತ್ತು, ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಪರಿಷತ್ತು ಮುಂತಾದ, ಉನ್ನತ ಶಿಕ್ಷಣದಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುವಂತೆ ನೋಡಿಕೊಳ್ಳುವುದಕ್ಕಾಗಿ ಗುಣಮಟ್ಟಗಳು ಮತ್ತು ಷರತ್ತುಗಳನ್ನು ವಿಧಿಸುವುದಕ್ಕಾಗಿ, ಕೇಂದ್ರ ಸರ್ಕಾರವು ಸ್ಥಾಪಿಸಿರುವ ಒಂದು ಸಂಸ್ಥೆ ಮತ್ತು ಇದರಲ್ಲಿ ಸರ್ಕಾರವೂ ಸೇರಿರುತ್ತದೆ;

(ಎಲ್) "ನಿಯಮಿಸಲಾದುದು" ಎಂದರೆ, ಈ ಅಧಿನಿಯಮದಡಿಯಲ್ಲಿ ಸರ್ಕಾರವು ರಚಿಸಲಾದ ನಿಯಮಗಳ ಮೂಲಕ ನಿಯಮಿಸಲಾದುದು;

(ಎಂ) "ಒಂದು ಘಟಕ ಕಾಲೇಜಿಗೆ ಸಂಬಂಧಪಟ್ಟಂತೆ ಪ್ರಾಂಶುಪಾಲರು" ಎಂದರೆ, ಘಟಕ ಕಾಲೇಜಿನ ಮುಖ್ಯಸ್ಥರು ಮತ್ತು ಪ್ರಾಂಶುಪಾಲರು ಇಲ್ಲದಿದ್ದಲ್ಲಿ ಅಥವಾ ನೇಮಕವಾದ ಪ್ರಾಂಶುಪಾಲರ ಗೈರುಹಾಜರಿಯಲ್ಲಿ, ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ತಾತ್ಕಾಲಿಕವಾಗಿ ನೇಮಕಗೊಂಡಿರುವ ಉಪಪ್ರಾಂಶುಪಾಲರು ಅಥವಾ ಯಾವುದೇ ಇತರ ವ್ಯಕ್ತಿಯೂ ಇದರಲ್ಲಿ ಒಳಗೊಳ್ಳುತ್ತಾರೆ;

(ಎನ್) "ಕುಲಸಚಿವರು" ಎಂದರೆ, ವಿಶ್ವವಿದ್ಯಾಲಯದ ಕುಲಸಚಿವರು;

(ಒ) "ಪ್ರಾದೇಶಿಕ ಕೇಂದ್ರ" ಎಂದರೆ, ಯಾವುದೇ ಪ್ರದೇಶದಲ್ಲಿನ ಅಧ್ಯಯನ ಕೇಂದ್ರಗಳ ಕಾರ್ಯವನ್ನು ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ಮಾಡುವ ಉದ್ದೇಶಕ್ಕಾಗಿ ಮತ್ತು ಅಂಥ ಕೇಂದ್ರಕ್ಕೆ ವ್ಯವಸ್ಥಾಪನಾ ಮಂಡಳಿಯು ವಹಿಸಿಕೊಡಬಹುದಾದ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸುವುದಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಅಥವಾ ನಿರ್ವಹಿಸಿಕೊಂಡುಬರುವ ಒಂದು ಕೇಂದ್ರ;

(ಪಿ) ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ "ಪ್ರಾಯೋಜಕ ಪ್ರಾಧಿಕಾರ" ಅಥವಾ "ಪ್ರಾಯೋಜಕ ಸಂಸ್ಥೆ" ಎಂದರೆ, ನ್ಯಾಸ;

(ಕ್ಯೂ) "ರಾಜ್ಯ" ಎಂದರೆ, ಕರ್ನಾಟಕ ರಾಜ್ಯ;

(ಆರ್) "ಪರಿನಿಯಮಗಳು" ಮತ್ತು "ವಿನಿಯಮಗಳು" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಅನುಕ್ರಮವಾಗಿ ವಿಶ್ವವಿದ್ಯಾಲಯದ ಪರಿನಿಯಮಗಳು ಮತ್ತು ವಿನಿಯಮಗಳು;

(ಎಸ್) "ಅಧ್ಯಯನ ಕೇಂದ್ರ" ಎಂದರೆ, ವಿದ್ಯಾರ್ಥಿಗಳಿಗೆ ಅಗತ್ಯವಾದ ಬುದ್ಧಿವಾದ, ಸಲಹೆಗಳನ್ನು ನೀಡುವ ಅಥವಾ ಇತರ ಯಾವುದೇ ನೆರವನ್ನು ನೀಡುವ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಮತ್ತು ನಿರ್ವಹಿಸಿಕೊಂಡುಬಂದ ಒಂದು ಕೇಂದ್ರ;

(ಟಿ) "ಅಧ್ಯಾಪಕರು" ಎಂದರೆ, ಒಬ್ಬ ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಒಂದು ಘಟಕ ಕಾಲೇಜಿನಲ್ಲಿ ಬೋಧಿಸುವುದಕ್ಕೆ ಅಥವಾ ಸಂಶೋಧನೆ ನಡೆಸುವುದಕ್ಕೆ ಅಥವಾ ಸಂಶೋಧನೆಗೆ ಮಾರ್ಗದರ್ಶನ ನೀಡುವುದಕ್ಕೆ ನೇಮಕವಾದ ಅಂಥ ಇತರ ವ್ಯಕ್ತಿ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗವು ನಿಯಮಿಸಿದ ಗುಣಮಟ್ಟಗಳಿಗೆ ಅನುಸಾರವಾಗಿ ಇರುವ ಘಟಕ ಕಾಲೇಜಿನ ಪ್ರಾಂಶುಪಾಲರು ಇದರಲ್ಲಿ ಒಳಗೊಳ್ಳುತ್ತಾರೆ;

(ಯು) "ನ್ಯಾಸ" ಎಂದರೆ, ಹರ್ಷಕ್ರಿಯ ಪ್ರತಿಷ್ಠಾನ (ನೋಂ) ನ್ಯಾಸ;

(ವಿ) "ವಿಶ್ವವಿದ್ಯಾಲಯ ಅನುದಾನಗಳ ಆಯೋಗ" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) 4ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ಆಯೋಗ;

(ಡಬ್ಲ್ಯೂ) "ವಿಶ್ವವಿದ್ಯಾಲಯ" ಎಂದರೆ, ಈ ಅಧಿನಿಯಮದಡಿಯಲ್ಲಿ ಸ್ಥಾಪಿಸಿ ನಿಗಮಿತಗೊಳಿಸಲಾದ ಅಮೃತ ಸಿಂಚನ ಆಧ್ಯಾತ್ಮಕ ವಿಶ್ವವಿದ್ಯಾಲಯ;

(ಎಕ್ಸ್) "ಸಂದರ್ಶಕರು" ಎಂದರೆ, 13ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ವಿಶ್ವವಿದ್ಯಾಲಯದ ಸಂದರ್ಶಕರು.

## ಅಧ್ಯಾಯ- II

## ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

3. **ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ.**- (1) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಹಕ್ಕನ್ನು ನ್ಯಾಸವು ಹೊಂದಿರತಕ್ಕದ್ದು.

(2) ನ್ಯಾಸವು ರಾಜ್ಯ ಸರ್ಕಾರಕ್ಕೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವವನ್ನು ಸಲ್ಲಿಸತಕ್ಕದ್ದು.

(3) ನ್ಯಾಸವು ಈ ಮುಂದಿನ ವಿವರಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ನ್ಯಾಸದ ವಿವರಗಳೊಂದಿಗೆ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು;

(ii) ವಿಶ್ವವಿದ್ಯಾಲಯದ ವ್ಯಾಪ್ತಿ ಮತ್ತು ಸ್ಥಾನಮಾನ ಹಾಗೂ ಭೂಮಿಯ ಲಭ್ಯತೆ;

(iii) ಪ್ರಾರಂಭದ ದಿನಾಂಕದಿಂದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳಬೇಕೆಂದಿರುವ ಅಧ್ಯಯನ ಮತ್ತು ಸಂಶೋಧನಾ ಕಾರ್ಯಕ್ರಮಗಳ ಸ್ವರೂಪ ಮತ್ತು ಬಗೆಗಳು;

(iv) ಪ್ರಾರಂಭಿಸಬೇಕೆಂದು ಪ್ರಸ್ತಾಪಿಸಿರುವ ವ್ಯಾಸಂಗ ವಿಭಾಗಗಳು (ಫ್ಯಾಕಲ್ಟಿಗಳು), ಅಧ್ಯಯನ ಕ್ರಮಗಳು ಮತ್ತು ಸಂಶೋಧನೆಗಳ ಸ್ವರೂಪ;

(v) ಕಟ್ಟಡಗಳು, ಸಲಕರಣೆಗಳು ಮತ್ತು ರಚನಾ ಸೌಕರ್ಯಗಳನ್ನು ಒದಗಿಸುವಂಥ ಕ್ಯಾಂಪಸ್ ಅಭಿವೃದ್ಧಿ;

(vi) ಪ್ರಾರಂಭದ ದಿನಾಂಕದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಗಾಗಿ ಬಂಡವಾಳ ವೆಚ್ಚದ ಹಂತಗಳು;

(vii) ಬಾಬುವಾರು ಆವರ್ತಕ ವೆಚ್ಚ, ಆರ್ಥಿಕ ಮೂಲಗಳು ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ತಗಲುವ ಅಂದಾಜು ವೆಚ್ಚ;

(viii) ಸಂಪನ್ಮೂಲ ಸಂಗ್ರಹಣೆಗಾಗಿ ಯೋಜನೆ ಮತ್ತು ಅದಕ್ಕೆ ಬಂಡವಾಳದಿಂದ ತಗಲುವ ವೆಚ್ಚ ಹಾಗೂ ಪ್ರತಿಯೊಂದು ಮೂಲಕ್ಕೂ ಮರು ಸಂದಾಯ ಮಾಡುವ ರೀತಿ;

(ix) ವಿದ್ಯಾರ್ಥಿಗಳಿಂದ ಶುಲ್ಕ ವಸೂಲು ಮಾಡಿ ಆಂತರಿಕವಾಗಿ ನಿಧಿ ಸಂಗ್ರಹಿಸುವ ಯೋಜನೆ, ಸಲಹಾ ಸೇವೆ ಮತ್ತು ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಿಗೆ ಸಂಬಂಧಿಸಿದ ಇತರ ಚಟುವಟಿಕೆಗಳಿಂದ ನಿರೀಕ್ಷಿತ ವರಮಾನಗಳು ಮತ್ತು ಇತರ ನಿರೀಕ್ಷಿತ ವರಮಾನಗಳು;

(x) ಘಟಕವೊಂದಕ್ಕೆ ತಗಲುವ ವೆಚ್ಚದ ವಿವರಗಳು, ಆರ್ಥಿಕವಾಗಿ ದುರ್ಬಲವಾದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕ, ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿ ವೇತನದಲ್ಲಿ ನೀಡುವ ರಿಯಾಯಿತಿ ಅಥವಾ ವಿನಾಯತಿಯ ಪರಿಮಿತಿಯ ವಿವರಗಳನ್ನು ಮತ್ತು ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳಿಗೆ ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳು ಪ್ರಾಯೋಜಿಸಿದ ವಿದ್ಯಾರ್ಥಿಗಳಿಗೆ ಮತ್ತು ಭಾರತವನ್ನುಳಿದು ಇತರ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ವಿಧಿಸತಕ್ಕ ಶುಲ್ಕದ ದರಗಳು ಬೇರೆ ಬೇರೆ ಇದ್ದಲ್ಲಿ ಅವುಗಳನ್ನು ಸೂಚಿಸುವ ಶುಲ್ಕ ರಚನೆಯ ವಿವರಗಳು;

(xi) ಸಂಬಂಧಪಟ್ಟ ವಿದ್ಯಾ ವಿಭಾಗದಲ್ಲಿ ಎಷ್ಟು ವರ್ಷಗಳ ಅನುಭವ ಮತ್ತು ಪರಿಣಿತಿಯನ್ನು ನ್ಯಾಸವು ದೊರಕಿಸಿಕೊಡಲಿದೆ ಹಾಗೂ ಅದರ ಹಣಕಾಸಿನ ಸಂಪನ್ಮೂಲಗಳು;

(xii) ವಿಶ್ವವಿದ್ಯಾಲಯದಲ್ಲಿರುವ ಅಧ್ಯಯನ ಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕಾಗಿ ಇರುವ ವ್ಯವಸ್ಥೆ;

(xiii) ವಿಶ್ವವಿದ್ಯಾಲಯವು ಸ್ಥಾಪನೆಯಾಗುವುದಕ್ಕೆ ಮೊದಲು ನೆರವೇರಿಸಬೇಕೆಂದು ರಾಜ್ಯ ಸರ್ಕಾರವು ಅಗತ್ಯಪಡಿಸಬಹುದಾದ ಅಂಥ ಇತರ ಷರತ್ತುಗಳ ನೆರವೇರಿಕೆಯ ಹಂತ.

(4) ಸ್ವೀಕರಿಸಿದ ಪ್ರಸ್ತಾವಗಳನ್ನು ಪರೀಕ್ಷಿಸಲು ರಾಜ್ಯ ಸರ್ಕಾರವು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಪದನಿಮಿತ್ತ ಸದಸ್ಯರಾದ ಮೂರು ಸದಸ್ಯರುಗಳನ್ನು ಒಳಗೊಂಡ ಒಂದು ಪರಿಶೋಧನಾ ಸಮಿತಿಯನ್ನು ರಚಿಸತಕ್ಕದ್ದು ಮತ್ತು ಅದು ರಾಜ್ಯ ಸರ್ಕಾರಕ್ಕೆ ಶಿಫಾರಸ್ಸನ್ನು ಮಾಡತಕ್ಕದ್ದು.

**4. ವಿಶ್ವವಿದ್ಯಾಲಯದ ಸ್ಥಾಪನೆ.–** (1) ರಾಜ್ಯ ಸರ್ಕಾರವು ಪರಿಶೋಧನಾ ಸಮಿತಿಯು ಮಾಡಿದ ಶಿಫಾರಸ್ಸುಗಳನ್ನು ಪರಿಶೀಲಿಸಿದ ತರುವಾಯ ಮತ್ತು ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ,–

(i) ನ್ಯಾಸವು ಸಾಕಷ್ಟು ಮೂಲ ಸೌಕರ್ಯದೊಂದಿಗೆ ವಿಶ್ವವಿದ್ಯಾಲಯವೊಂದನ್ನು ನಡೆಸಲು ಸಮರ್ಥವಾಗಿದೆ ಎಂದು ಅದು ಮನಗಂಡರೆ;

(ii) ಪ್ರದೇಶಕ್ಕನುಸಾರವಾಗಿ ಕೆಳಗೆ ನಿರ್ದಿಷ್ಟ ಪಡಿಸಿದ ವ್ಯಾಪ್ತಿಗೆ ಭೂಮಿಯ ಒಡೆತನವನ್ನು ಹೊಂದಿರತಕ್ಕದ್ದು, ಎಂದರೆ:–

(ಎ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯೊಳಗಿದ್ದರೆ ಇಪ್ಪತ್ತೈದು ಎಕರೆಗಳು;

(ಬಿ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯಿಂದ ಹೊರಗೆ ಇದ್ದು, ಆದರೆ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಪ್ರದೇಶದ ಒಳಗೆ ಇದ್ದರೆ ನಲವತ್ತು ಎಕರೆಗಳು;

(ಸಿ) ಭೂಮಿಯು (ಎ) ಮತ್ತು (ಬಿ) ಖಂಡಗಳಲ್ಲಿ ನಿರ್ದಿಷ್ಟಪಡಿಸಿದ ಸ್ಥಳಗಳನ್ನು ಹೊರತುಪಡಿಸಿದ್ದರೆ ಅರವತ್ತು ಎಕರೆಗಳಿಗಿಂತ ಕಡಿಮೆ ಇರತಕ್ಕದ್ದಲ್ಲ.

ಮೇಲೆ ನಿರ್ದಿಷ್ಟಪಡಿಸಿದ ಭೂಮಿಯು ಏಕ ಘಟಕ(ಸಿಂಗಲ್ ಬ್ಲಾಕ್) ದಲ್ಲಿರತಕ್ಕದ್ದು ಮತ್ತು ಇದು ಸಂಬಂಧಪಟ್ಟ ನ್ಯಾಸ / ಪ್ರತಿಷ್ಠಾನ / ಸಂಸ್ಥೆ / ವಿಶ್ವವಿದ್ಯಾಲಯದ ಹೆಸರಿನಲ್ಲಿರತಕ್ಕದ್ದು. 3ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ಅಗತ್ಯಪಡಿಸಲಾದಂತೆ ಒದಗಿಸಿದ ವಿವರಗಳ ಆಧಾರದ ಮೇಲೆ ಸರ್ಕಾರವು 47ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಬೇಕೆಂದು ನ್ಯಾಸಕ್ಕೆ ನಿರ್ದೇಶನ ನೀಡಬಹುದು.

(2) ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಸ್ಥಾಪನೆಯ ತರುವಾಯ, ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, "ಅಮೃತ ಸಿಂಚನ ಆಧ್ಯಾತ್ಮಿಕ ವಿಶ್ವವಿದ್ಯಾಲಯ" ಎಂಬ ಹೆಸರಿನ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ರಾಜ್ಯದಲ್ಲಿ ಸ್ಥಾಪಿಸುವುದಕ್ಕೆ ಮಂಜೂರಾತಿಯನ್ನು ನೀಡಬಹುದು.

(3) ವಿಶ್ವವಿದ್ಯಾಲಯದ ಕೇಂದ್ರ ಕಾರ್ಯಸ್ಥಾನವು ರಾಜ್ಯ ಸರ್ಕಾರದ ಅನುಮೋದನೆಯೊಂದಿಗೆ ಪ್ರಾಯೋಜಿಕ ಸಂಸ್ಥೆಯು ನಿರ್ಧರಿಸಬಹುದಾದ ಅಂಥ ಸ್ಥಳದಲ್ಲಿ ಇರತಕ್ಕದ್ದು. ವಿಶ್ವವಿದ್ಯಾಲಯವು ತನ್ನ ಕ್ಯಾಂಪಸ್ಸುಗಳನ್ನು ಅಥವಾ ಪ್ರಾದೇಶಿಕ ಕೇಂದ್ರಗಳನ್ನು, ಅಧ್ಯಯನ ಕೇಂದ್ರಗಳನ್ನು ಕರ್ನಾಟಕದ ಯಾವುದೇ ಭಾಗದಲ್ಲಿ ಹೊಂದಿರತಕ್ಕದ್ದು ಮತ್ತು ಆ ಬಗ್ಗೆ ರಾಜ್ಯ ಸರ್ಕಾರದ ಪೂರ್ವಾನುಮತಿಯನ್ನು ಪಡೆದುಕೊಳ್ಳುವುದಕ್ಕೊಳಪಟ್ಟು ಹಾಗೂ ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗನುಸಾರವಾಗಿ ಹೊಂದಿರತಕ್ಕದ್ದು.

(4) ಮೊದಲ ಕುಲಾಧಿಪತಿಯವರು, ಮೊದಲ ಕುಲಪತಿಯವರು, ಪ್ರಬಂಧಕ ಮಂಡಳಿಯ ಮೊದಲ ಸದಸ್ಯರುಗಳು, ವ್ಯವಸ್ಥಾಪನಾ ಮಂಡಳಿಯ ಹಾಗೂ ಶೈಕ್ಷಣಿಕ ಪರಿಷತ್ತಿನ ಮೊದಲ ಸದಸ್ಯರುಗಳು ಮತ್ತು ಇನ್ನು ಮುಂದೆ, ಅಂಥ ಅಧಿಕಾರಿಗಳು ಅಥವಾ ಸದಸ್ಯರುಗಳಾಗಬಹುದಾದಂಥ ಎಲ್ಲಾ ವ್ಯಕ್ತಿಗಳು, ಅಂಥ ಪದ ಅಥವಾ ಸದಸ್ಯತ್ವವನ್ನು ಹೊಂದಿರುವುದು ಮುಂದುವರೆಯುವವರೆಗೆ, ಒಂದು ನಿಗಮಿತ ನಿಕಾಯವನ್ನು ರಚಿಸತಕ್ಕದ್ದು. ಮತ್ತು ಅದು ವಿಶ್ವವಿದ್ಯಾಲಯದ ಹೆಸರಿನಲ್ಲಿ ದಾವೆ ಹೂಡಬಹುದು ಮತ್ತು ದಾವೆಗೊಳಗಾಗಬಹುದು.

(5) (2)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯವು ಸ್ಥಾಪನೆಗೆ ಮಂಜೂರಾತಿಯಾದ ಮೇಲೆ, ವಿಶ್ವವಿದ್ಯಾಲಯದ ಉದ್ದೇಶಕ್ಕಾಗಿ, ನ್ಯಾಸವು ಆರ್ಜಿಸಿದ, ಸೃಜಿಸಿದ, ಏರ್ಪಾಟು ಮಾಡಿಕೊಂಡ ಅಥವಾ ಕಟ್ಟಲ್ಪಟ್ಟ ಭೂಮಿ ಮತ್ತು ಇತರ ಸ್ಥಿರ ಮತ್ತು ಚರ ಸ್ವತ್ತು, ವಿಶ್ವವಿದ್ಯಾಲಯದಲ್ಲಿ ನಿಹಿತವಾಗಿರತಕ್ಕದ್ದು.

(6) ವಿಶ್ವವಿದ್ಯಾಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದ ಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂಥ ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

(7) ವಿಶ್ವವಿದ್ಯಾಲಯದಲ್ಲಿನ ಭೂಮಿ, ಕಟ್ಟಡ ಮತ್ತು ಇತರ ಸ್ವತ್ತುಗಳನ್ನು ವಿಶ್ವವಿದ್ಯಾಲಯದ ಉದ್ದೇಶಗಳಿಗೆ ಆನುಷಂಗಿಕವಾಗಿರುವುದನ್ನು ಹೊರತುಪಡಿಸಿ ಇತರ ಯಾವುದೇ ಉದ್ದೇಶಕ್ಕಾಗಿ ಬಳಸತಕ್ಕದ್ದಲ್ಲ.

**5. ಅನುದಾನಗಳು ಮತ್ತು ಹಣಕಾಸು ನೆರವು.**– ವಿಶ್ವವಿದ್ಯಾಲಯವು ಸ್ವಂತ ಧನಮೂಲ ಉಳ್ಳದ್ದಾಗಿರತಕ್ಕದ್ದು ಮತ್ತು ರಾಜ್ಯದಿಂದ ಅಥವಾ ರಾಜ್ಯದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಇತರ ಸಂಸ್ಥೆ ಅಥವಾ ನಿಗಮದಿಂದ ಯಾವುದೇ ನಿರ್ವಹಣಾ ಸಹಾಯ ಅನುದಾನ ಅಥವಾ ಯಾವುದೇ ಹಣಕಾಸು ನೆರವನ್ನು ಹಕ್ಕಿನಿಂದ ಕೇಳತಕ್ಕದ್ದಲ್ಲ ಅಥವಾ ಅದನ್ನು ಪಡೆಯಲು ಹಕ್ಕನ್ನು ಹೊಂದಿರತಕ್ಕದ್ದಲ್ಲ:

ಪರಂತು, ರಾಜ್ಯವು,–

(ಎ) ಇತರ ರಾಜ್ಯ ಸರ್ಕಾರದ ಸಂಘಟನೆಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿರುವಂಥದ್ದೇ ಸಂಶೋಧನೆ, ಅಭಿವೃದ್ಧಿ ಮತ್ತಿತರ ಚಟುವಟಿಕೆಗಳಿಗಾಗಿ; ಅಥವಾ

(ಬಿ) ಸರ್ಕಾರದಿಂದ ನೆರವನ್ನು ಪಡೆಯುವ ಯಾವುದೇ ನಿರ್ದಿಷ್ಟ ಸಂಶೋಧನೆ ಅಥವಾ ಕಾರ್ಯಕ್ರಮಗಳಿಗಾಗಿ; ಮತ್ತು

(ಸಿ) ರಾಜ್ಯ ಕಾರ್ಯನೀತಿಯ ಬದಲಾವಣೆಗೆ ಒಳಪಟ್ಟು ಅಥವಾ ಅನ್ಯಥಾ ಇದೇ ಬಗೆಯ ವಿಶ್ವವಿದ್ಯಾಲಯಗಳಿಗೆ ಅವಕಾಶವನ್ನು ಕಲ್ಪಿಸುವುದಕ್ಕೆ ಅಥವಾ ಅವುಗಳ ಪ್ರಯೋಜನಕ್ಕಾಗಿ,

– ಅನುದಾನದ ಮೂಲಕ ಅಥವಾ ಅನ್ಯಥಾ ಹಣಕಾಸು ಬೆಂಬಲವನ್ನು ಒದಗಿಸಬಹುದು.

ಮತ್ತು ಪರಂತು, ವಿಶ್ವವಿದ್ಯಾಲಯವು, ಯಾವುದೇ ಇತರ ಮೂಲದಿಂದ ಯಾವುದೇ ಆರ್ಥಿಕ ನೆರವನ್ನು ಸ್ವೀಕರಿಸಬಹುದು.

**6. ಘಟಕ ಕಾಲೇಜು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಅಥವಾ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದಕ್ಕೆ ಅಧಿಕಾರ.–** ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಐದು ವರ್ಷಗಳನ್ನು ಪೂರ್ಣಗೊಳಿಸಿದ ನಂತರ, ವಿಶ್ವವಿದ್ಯಾಲಯ ಅನುದಾನ ಆಯೋಗದ ಮತ್ತು ಇತರ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ಗುಣಮಟ್ಟಗಳಿಗೆ ಒಳಪಟ್ಟು, ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ, ವಿಶ್ವವಿದ್ಯಾಲಯವು, ರಾಜ್ಯದಲ್ಲಿ ತನಗೆ ಸೂಕ್ತವೆನಿಸುವಂಥ ಸ್ಥಳಗಳಲ್ಲಿ ಘಟಕ ಕಾಲೇಜುಗಳು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದಿರಬಹುದು.

**7. ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು.–** ವಿಶ್ವವಿದ್ಯಾಲಯವು ತನ್ನ ಭವಿಷ್ಯದ್ ದೃಷ್ಟಿ ಮತ್ತು ಧ್ಯೇಯೋದ್ದೇಶಗಳನ್ನು ಸಾಧಿಸಲು ಈ ಮುಂದಿನ ವಿಸ್ತೃತ ಕಾರ್ಯತಂತ್ರಗಳನ್ನು ಕೈಗೊಳ್ಳಬಹುದು:–

(1) ವಿದ್ಯಾರ್ಥಿಗಳಿಗೆ ಮಾನವ ಮೌಲ್ಯಗಳು, ಕೌಟುಂಬಿಕ ಮೌಲ್ಯಗಳು, ಸಾಮಾಜಿಕ ಮೌಲ್ಯಗಳು, ರಾಷ್ಟ್ರೀಯ ಮೌಲ್ಯಗಳು ಮತ್ತು ಆಧ್ಯಾತ್ಮಿಕ ಮೌಲ್ಯಗಳು ಮುಂತಾದ ಮೌಲ್ಯವರ್ಧಿತ ಶಿಕ್ಷಣವನ್ನು ನೀಡುವ ಮೂಲಕ ವಿದ್ಯಾರ್ಥಿಗಳು ಜವಾಬ್ದಾರಿಗಳನ್ನು ಹೊರಲು ತಯಾರಾಗುವಂತೆ ಮಾಡಿ ಅವರು ಪದವೀಧರರಷ್ಟೇ ಆಗದೆ ಮುಖಂಡರುಗಳಾಗುವಂತೆ ಮಾಡುವುದು;

(2) ಜೀವನ ಮತ್ತು ಜೀವನ ಕೌಶಲಗಳ ಜ್ಞಾನವನ್ನು ನೀಡುವುದು, ಮೌಲ್ಯಗಳನ್ನು ಮತ್ತು ತತ್ವಗಳನ್ನು ಮೈಗೂಡಿಸುವುದು, ಪ್ರಕೃತಿ ಮತ್ತು ವಿಶ್ವದೊಂದಿಗೆ ಸಾಮರಸ್ಯದೊಂದಿಗೆ ಇರುವುದು, ಪ್ರತಿಯೊಂದು ಜೀವಿಯನ್ನು ಪ್ರೀತಿಸುವುದು ಮತ್ತು ಗೌರವಿಸುವುದು, ಪರಮಾತ್ಮನೊಂದಿಗೆ ಲೀನವಾಗುವುದು ಹೇಗೆಂಬ ಬಗ್ಗೆ ಅರಿವನ್ನು ಮೂಡಿಸುವುದು;

(3) ಭಾರತೀಯ ಪ್ರಾಚೀನ ಆಧ್ಯಾತ್ಮಿಕ ಸಂಸ್ಕೃತಿ: ಗುರು–ಶಿಷ್ಯ ಪರಂಪರೆಯ ಅಸ್ತಿತ್ವವನ್ನು ಮರಳಿ ತರುವುದು;

(4) ಆರೋಗ್ಯದ ಮತ್ತು ಆರೋಗ್ಯಪಾಲನೆಯ ಮಾರ್ಗಗಳ ಬಗ್ಗೆ ಸಮಾಜದಲ್ಲಿ ಅರಿವನ್ನುಂಟು ಮಾಡುವುದು ಮತ್ತು ಅದರಿಂದ ಆರೋಗ್ಯಕರ,, ಸಾಮರಸ್ಯ ಸಮಾಜವನ್ನು ಸೃಜಿಸುವುದು;

(5) ಸಹ ಮಾನವ ಜೀವಿಗಳ ಯಾತನೆಗಳನ್ನು ಕಡಿಮೆ ಮಾಡುವುದು ಮತ್ತು ಪ್ರಕೃತಿ ಧರ್ಮಗಳು ಮತ್ತು ಪ್ರಾಕೃತಿಕ ವಸ್ತುಗಳ ಮೇಲೆ ಆಧಾರಿತವಾದ ಔಷಧ ರಹಿತ ಶಕ್ತಿ ವರ್ಧಕ ವೈದ್ಯಕೀಯ ಪದ್ಧತಿಯನ್ನು ಪ್ರೋತ್ಸಾಹಿಸುವುದು ಮತ್ತು ಜನಪ್ರಿಯಗೊಳಿಸುವುದು;

(6) ಶತಮಾನಗಳಿಂದ ಹೆಸರುವಾಸಿಯಾದ ಭಾರತದ ಪರಂಪರೆಯ ಮೂಲಕ ಪ್ರಸ್ತುತ ಇರುವ ಅವ್ಯವಸ್ಥಿತ ಸ್ಥಿತಿಯಿಂದ, ಸಮಾಜವನ್ನು ಪರಿವರ್ತಿಸಲು ಸರಿಯಾದ ಜ್ಞಾನ ಮತ್ತು ಶಿಸ್ತನ್ನು ಕಲ್ಪಿಸುವುದು;

(7) ಶಿಕ್ಷಣ ಕ್ಷೇತ್ರದಲ್ಲಿ ತಮ್ಮ ಮಕ್ಕಳು ಏನಾಗಬೇಕು ಎಂಬುದನ್ನು ಅಪೇಕ್ಷಿಸುವ ಬಗ್ಗೆ ತಂದೆ ತಾಯಿಗಳಿಗೆ ಸ್ಪಷ್ಟತೆಯನ್ನು ನೀಡುವುದು ಮತ್ತು ಅವರಿಗೆ ತಮ್ಮ ಮಕ್ಕಳ ಜವಾಬ್ದಾರಿಗಳ ಬಗ್ಗೆ ಅರಿವನ್ನು ಮೂಡಿಸುವುದು;

(8) ಆಧ್ಯಾತ್ಮದ ಬೋಧನೆಯ ಪ್ರಾಚೀನ ವಿಧಾನವನ್ನು ಮತ್ತು ಯೋಗಿಗಳಂಥ ನಮ್ಮ ಪೂರ್ವಜರು ತಮ್ಮ ವಿಮಲ ಸಂಶೋಧನೆಗಳ ಫಲವಾಗಿ ಪಡೆದ ಅನುಭವವನ್ನು ಮನಸ್ಸಿಗೆ ನಾಟುವಂತೆ ಹೇಳುವುದು. ಇದು ವಿದ್ಯಾರ್ಥಿಗಳಿಗೆ ಜ್ಞಾನದ ಹಿಂದಿರುವ ವಿವೇಕವನ್ನು ಅರ್ಥಮಾಡಿಕೊಳ್ಳಲು ಮತ್ತು ತಮ್ಮ ಕೌಶಲಗಳನ್ನು ಕೇವಲ ಕಲಿಸುವುದು ಮಾತ್ರವಲ್ಲದೆ ತಮ್ಮ ಅಭ್ಯುದಯಕ್ಕೆ ಅದನ್ನು ಉಪಯೋಗಿಸುವುದು;

(9) ಪ್ರಾಚೀನ ಪದ್ಧತಿಯ ಮೂಲಕ ಪಾರಂಪರಿಕ ಉಪಶಮನ ವಿಧಾನಗಳನ್ನು ಗುರುತಿಸುವುದು;

(10) ಪ್ರಭಾವಯುತ ಉಪಶಮನಕಾರರನ್ನು ಹಾಗೂ ಅವರ ಪ್ರತಿಭೆಯನ್ನು ಗುರುತಿಸುವ ಮೂಲಕ ಅವರನ್ನು ಬೆಳಕಿಗೆ ತಂದು ಅವರ ಮೌಲ್ಯಯುತ ಸೇವೆಯನ್ನು ಅಗತ್ಯವಿರುವವರಿಗೆ ಲಭ್ಯವಾಗುವಂತೆ ಮಾಡುವುದು;

(11) ಯಶಸ್ವಿ ಉಪಶಮನಕಾರರಿಗೆ ತಮ್ಮ ಜ್ಞಾನ ಮತ್ತು ಅನುಭವವನ್ನು ಹಂಚಿಕೊಳ್ಳಲು ಒಂದು ವೇದಿಕೆಯನ್ನು ಕಲ್ಪಿಸುವುದು ಮತ್ತು ಅವರನ್ನು ಆಶ್ರಯಿಸುವ ಒಂದು ವಿಶ್ವಾಸಾರ್ಹವಾದ ಪದ್ಧತಿಯನ್ನು ಒದಗಿಸುವುದು;

(12) ಈಗಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಜೀವನವನ್ನು ನಡೆಸಲು ಸಮರ್ಥರಲ್ಲದ ಗ್ರಾಮೀಣ ಅಭ್ಯರ್ಥಿಗಳಿಗೆ ಅವರ ಸಂವಹನ ಕೌಶಲಗಳನ್ನು ಎತ್ತಿಹಿಡಿಯುವ ಮೂಲಕ, ಅವರೆಡೆಗೆ ಹೆಚ್ಚಿನ ಗಮನವನ್ನು ನೀಡುವುದು;

(13) ಆರೋಗ್ಯ, ವಿಜ್ಞಾನಗಳು, ಸಾಮಾಜಿಕ ವಿಜ್ಞಾನಗಳು, ಮಾನವಿಕಗಳು ಮತ್ತು ವ್ಯವಸ್ಥಾಪನೆ ಇಂಥ ಕ್ಷೇತ್ರಗಳಲ್ಲಿ ವಿವಿಧ ಪಠ್ಯ ವಿಷಯಗಳಲ್ಲಿ ಶಿಕ್ಷಣ, ಬೋಧನೆ, ತರಬೇತಿ, ಸಂಶೋಧನೆ ಮತ್ತು ಅಭಿವೃದ್ಧಿಯನ್ನು ಕಲ್ಪಿಸುವುದು ಮತ್ತು ಈ ಕ್ಷೇತ್ರಗಳಲ್ಲಿ ಸಂಶೋಧನೆ, ಪ್ರಗತಿ ಮತ್ತು ಪ್ರಸರಣಕ್ಕಾಗಿ ಉಪಬಂಧಗಳನ್ನು ಕಲ್ಪಿಸುವುದು;

(14) ಪ್ರಾಚೀನ ಪಠ್ಯಗಳನ್ನು ಪ್ರಾದೇಶಿಕ ಭಾಷೆಗಳಿಗೆ ಮತ್ತು ಇಂಗ್ಲೀಷ್ ಭಾಷೆಗೆ ಅನುವಾದ ಮಾಡುವುದು ಮತ್ತು ಪ್ರಾದೇಶಿಕ ಭಾಷಾ ಜ್ಞಾನವನ್ನು ಇಂಗ್ಲೀಷ್‌ಗೆ ಅನುವಾದ ಮಾಡುವುದು;

(15) ಪ್ರಾಚೀನ ಗ್ರಂಥಗಳ (ತಾಳೆಗರಿ, ಶಾಸನ ಇತ್ಯಾದಿಗಳು) ಅಧ್ಯಯನಕ್ಕೆ ಸೌಲಭ್ಯವನ್ನು ಕಲ್ಪಿಸುವುದು;

(16) ಗುಣಮಟ್ಟದ ಶಿಕ್ಷಣವನ್ನು ಉತ್ತೇಜಿಸುವುದಕ್ಕಾಗಿ ಸಂಪನ್ಮೂಲ ಕೇಂದ್ರಗಳನ್ನು ಅಭಿವೃದ್ಧಿಪಡಿಸುವುದು;

(17) ಭಾರತೀಯ ಧಾರ್ಮಿಕ ನಂಬಿಕೆಗಳ ಮತ್ತು ಮಹಾ ಗ್ರಂಥಗಳ (ರಾಮಾಯಣ, ಮಹಾಭಾರತ, ಭಗವದ್ಗೀತೆ, ಉಪನಿಷತ್ತುಗಳು, ಪುರಾಣಗಳು, ಪಂಚತಂತ್ರ, ಜಾತಕ) ಅಧ್ಯಯನ ಮತ್ತು ಸಂಶೋಧನೆಗಾಗಿ ಸೌಲಭ್ಯವನ್ನು ಕಲ್ಪಿಸುವುದು;

(18) ರೇಖಿ ಮತ್ತು ಇತರ ವಿಧಾನಗಳು, ಪಾರಂಪರಿಕ ಭಾರತೀಯ ವಾಸ್ತು ಮತ್ತು ಫೆಂಗ್‌ಶುಯಿ, ಕದನ ಕಲೆಗಳು, ಆಧ್ಯಾತ್ಮಿಕ ಉಪಶಮನ, ಮಣಿಗಳು ಮತ್ತು ಹರಳುಗಳು, ಜ್ಯೋತಿಶಾಸ್ತ್ರ, ಸಂಗೀತ ಚಿಕಿತ್ಸೆ, ಪೌಷ್ಠಿಕತೆ, ಧ್ಯಾನ, ಯೋಗ, ಔಷಧೀಯ ಸಸ್ಯಗಳು, ವಾಸ್ತು, ಮುದ್ರೆಗಳು, ರುದ್ರಾಕ್ಷಿ, ಸಂಖ್ಯಾಶಾಸ್ತ್ರ, ಮಸಾಜು ಮಾಡುವುದು, ಯಂತ್ರ, ಮಂತ್ರ ಮತ್ತು ತಂತ್ರಗಳಲ್ಲಿ ಉಪಯೋಗಿಸುವ ಸಸ್ಯ ಜನ್ಯ ಉತ್ಪಾದನೆಗಳನ್ನು ಬಳಸಿಇಂಥ ಮಾನವ ಶಕ್ತಿ ವರ್ಧಕ ಕ್ಷೇತ್ರ, ಉಪಶಮನಕಾರಿ ಶಕ್ತಿ ಕ್ಷೇತ್ರ ವಿಧಾನಗಳಂಥ ವಿಷಯಗಳ ಉಪಶಮನ ಮತ್ತು ಸಲಹೆಯ ಅಧ್ಯಯನ ಮತ್ತು ಸಂಶೋಧನೆಗಾಗಿ ಸೌಲಭ್ಯ ಕಲ್ಪಿಸುವುದು;

(19) ಕರಕುಶಲ ವಸ್ತುಗಳು, ವರ್ಣಕಲೆಗಳು, ಮರಗೆಲಸ, ಶಿಲ್ಪಕಲೆ, ಭೂದೃಶ್ಯ ಚಿತ್ರಕಲೆ, ತೋಟಗಾರಿಕೆಯಂಥ ವೃತ್ತಿಪರ ತರಬೇತಿಯನ್ನು ನೀಡುವುದು ಮತ್ತು ಬೆತ್ತದಿಂದ ಬುಟ್ಟಿಯನ್ನು ಹೆಣೆಯುವುದು, ಕುದರೆ ಮತ್ತು ನಾಯಿಸಾಕಣೆ, ಹಾಲು ಅಥವಾ ಹಾಲು ಉತ್ಪಾದನೆಗಳು, ಚಾಕೊಲೇಟ್ ಮಾಡುವುದು, ಅಡುಗೆ ಮಾಡುವುದು, ಆಟೋಮೊಬೈಲ್ ಮೆಕಾನಿಕ್‌ಗಳು ಸ್ವಸಾಮರ್ಥ್ಯವನ್ನು ಹೊಂದಲು ಅನುವಾಗುವ ಮತ್ತು ಕಲಾಕಾರರಿಗೆ ಪ್ರಯೋಜನವಾಗುವಂಥ ಪರಿಸರ ಸ್ನೇಹಿ ಉತ್ಪಾದನೆಗಳನ್ನು ತಯಾರಿಸುವುದು;

(20) ಶಿಕ್ಷಣದಲ್ಲಿ ಬದಲಾವಣೆ ಮತ್ತು ಸಾಮಾಜಿಕ ಮತ್ತು ಮಾನವ ಅಭಿವೃದ್ಧಿಯ ಅರ್ಥೈಸುವಿಕೆಗೆ ಕೊಡುಗೆ ನೀಡಲು ಮತ್ತು ಅದನ್ನು ಅಭಿವೃದ್ಧಿಪಡಿಸಲು ಕ್ಯಾಂಪಸ್ಸುಗಳನ್ನು ಸ್ಥಾಪಿಸುವುದು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದುವುದು;

(21) ನಿರ್ಧರಣೆಯ ವಿವಿಧ ಆಧುನಿಕ ವಿಧಾನಗಳ ಮೂಲಕ ಮಾಡಿದ ಮೌಲ್ಯಮಾಪನಕ್ಕೆ ಅನುಸಾರವಾಗಿ ಯಶಸ್ವಿಯಾಗಿ ಪೂರ್ಣಗೊಳಿಸಿದುದರ ಆಧಾರದ ಮೇಲೆ ಪದವಿಗಳನ್ನು, ಡಿಪ್ಲೋಮೋಗಳನ್ನು, ಪ್ರಮಾಣಪತ್ರಗಳನ್ನು ಮತ್ತು ಯಶೋಪತ್ರ ಪ್ರದಾನದಂಥ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(22) ವಿಚಾರ ಸಂಕೀರ್ಣಗಳು, ಸಮ್ಮೇಳನಗಳು, ಕಾರ್ಯಾಂಗ ಶಿಕ್ಷಣ ಕಾರ್ಯಕ್ರಮಗಳು, ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳು, ಪ್ರಕಟಣೆಗಳು ಮತ್ತು ತರಬೇತಿ ಕಾರ್ಯಕ್ರಮಗಳು ಮತ್ತು ಕಾರ್ಯಸೂಚಿಗಳ ಮೂಲಕ ಜ್ಞಾನ ಪ್ರಸಾರ ಮಾಡುವುದು ಮತ್ತು ಶಿಕ್ಷಣ ಮತ್ತು ತತ್ಸಂಬಂಧಿತ ಅಭಿವೃದ್ಧಿ ಕ್ಷೇತ್ರಗಳ ವಿಷಯಗಳ ಬಗ್ಗೆ ಸಾರ್ವಜನಿಕ ಚರ್ಚೆಯನ್ನು ಏರ್ಪಡಿಸುವುದು;

(23) ಉತ್ತಮ ಗುಣಮಟ್ಟದ ಇತರ ಯಾವುವೇ ವಿಶ್ವವಿದ್ಯಾಲಯಗಳೊಂದಿಗೆ ಸಹಭಾಗಿಗಳಾಗಿ ವಿಶ್ವವಿದ್ಯಾಲಯದ ಬೋಧಕ ವೃಂದ (ಫ್ಯಾಕಲ್ಟಿ) ಮತ್ತು ಸಂಶೋಧಕರ ಅಭಿವೃದ್ಧಿ ಮತ್ತು ತರಬೇತಿಗಾಗಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು;

(24) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದಕ್ಕಾಗಿ ಮತ್ತು ಉತ್ತೇಜಿಸುವುದಕ್ಕಾಗಿ ಯಾವುದೇ ಅವಶ್ಯಕವಾದ ಮತ್ತು ಯುಕ್ತವಾದ ಕ್ರಮಗಳನ್ನು ಕೈಗೊಳ್ಳುವುದು;

(25) ಶಿಕ್ಷಣ ಮತ್ತು ಇತರ ಅಭಿವೃದ್ಧಿ ವಲಯಗಳನ್ನು ವಿಸ್ತರಿಸುವುದಕ್ಕಾಗಿ ರಾಜ್ಯ ಸರ್ಕಾರವು ಅನುಮೋದಿಸ ಬಹುದಾದಂತೆ ಯಾವುವೇ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದು;

(26) ವಿಜ್ಞಾನ, ಶಿಕ್ಷಣ, ಸಾಹಿತ್ಯ, ಸಮಾಜಸೇವೆ ಮುಂತಾದ ಕ್ಷೇತ್ರದಲ್ಲಿ ಖ್ಯಾತ ವ್ಯಕ್ತಿಗಳಿಗೆ ಬಿರುದು ನೀಡುವುದು;

(27) ಪುಸ್ತಕಗಳು, ನಿಯತಕಾಲಿಕೆಗಳು, ಬ್ರೋಷರುಗಳು ಮತ್ತು ಪತ್ರಗಳನ್ನು ತರುವುದು, ಪ್ರಕಟಿಸುವುದು ಮತ್ತು ಮಾರಾಟ ಮತ್ತು ಹಂಚಿಕೆ ಮಾಡುವುದು.

**8. ವಿಶ್ವವಿದ್ಯಾಲಯದ ಅಧಿಕಾರಗಳು.–** ವಿಶ್ವವಿದ್ಯಾಲಯವು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗೆ ಅನುಸಾರವಾಗಿ ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿರ್ಧರಿಸಬಹುದಾದಂತೆ ಕ್ಯಾಂಪಸ್ಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಕರ್ನಾಟಕದಲ್ಲಿ ಸ್ಥಾಪಿಸುವುದು ಮತ್ತು ನಿರ್ವಹಿಸುವುದು;

(ii) ವಿಶ್ವವಿದ್ಯಾಲಯದ ಉದ್ದೇಶವನ್ನು ಕಾರ್ಯರೂಪಕ್ಕೆ ತರುವಲ್ಲಿ ಅಗತ್ಯವಾಗಬಹುದಾದ ಅಥವಾ ಕಾರ್ಯಸಾಧ್ಯವಾಗಬಹುದಾದ ಎಲ್ಲಾ ಅಂಥ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು;

(iii) ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಮತ್ತು ಷರತ್ತುಗಳಿಗೊಳಪಟ್ಟು ಪದವಿಗಳು ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರದಾನಮಾಡುವುದು;

(iv) ಪರಿನಿಯಮಗಳನ್ವಯ ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿ ವೇತನಗಳು ಮತ್ತು ಬಹುಮಾನಗಳು, ಅವಾರ್ಡುಗಳು, ಪಾರಿತೋಷಕಗಳು ಇತ್ಯಾದಿಗಳನ್ನು ಸ್ಥಾಪಿಸುವುದು ಮತ್ತು ನೀಡುವುದು;

(v) ಪರಿನಿಯಮಗಳಲ್ಲಿ ಅಥವಾ ಸಂದರ್ಭಾನುಸಾರವಾಗಿ ನಿಯಮಗಳಲ್ಲಿ ನಿಗದಿಪಡಿಸಬಹುದಾದ ಅಂಥ ಶುಲ್ಕಗಳು, ಬಿಲ್ಲುಗಳು, ಖರೀದಿ ಪಟ್ಟಿಗಳನ್ನು ಕೇಳಿಪಡೆದುಕೊಳ್ಳುವುದು ಮತ್ತು ಸ್ವೀಕರಿಸುವುದು ಹಾಗೂ ಚಾರ್ಜುಗಳನ್ನು ವಸೂಲು ಮಾಡುವುದು;

(vi) ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಪಠ್ಯೇತರ ಚಟುವಟಿಕೆಗಳಿಗೆ ಅವಕಾಶಗಳನ್ನು ಕಲ್ಪಿಸುವುದು;

(vii) ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಕ್ಯಾಂಪಸುಗಳ, ಪ್ರಾದೇಶಿಕ ಕೇಂದ್ರಗಳ, ಅಧ್ಯಯನ ಕೇಂದ್ರಗಳ ಫ್ಯಾಕಲ್ಟಿ, ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವುದು;

(viii) ವಿಶ್ವವಿದ್ಯಾಲಯದ ಅಥವಾ ಒಂದು ಘಟಕ ಕಾಲೇಜಿನ ಅಥವಾ ಕ್ಯಾಂಪಸ್ಸಿನ, ಪ್ರಾದೇಶಿಕ ಕೇಂದ್ರದ, ಅಧ್ಯಯನ ಕೇಂದ್ರದ ಉದ್ದೇಶಕ್ಕಾಗಿ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದಿರುವ, ಯಾವುದೇ ರೀತಿಯ ಸ್ವಯಂ ದೇಣಿಗೆಗಳು ಮತ್ತು ಕೊಡುಗೆಗಳನ್ನು ಸ್ವೀಕರಿಸುವುದು ಮತ್ತು ನ್ಯಾಸ ಮತ್ತು ದತ್ತಿ ಸ್ವತ್ತುಗಳೂ ಸೇರಿದಂತೆ, ಯಾವುದೇ ಚರ ಅಥವಾ ಸ್ಥಿರ ಸ್ವತ್ತನ್ನು ಆರ್ಜಿಸುವುದು, ಹೊಂದಿರುವುದು, ನಿರ್ವಹಿಸುವುದು, ನಡೆಸುವುದು ಮತ್ತು ಹಸ್ತಾಂತರ ಮಾಡುವುದು;

(ix) ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸಿಕೊಂಡು ಬರುವುದು ಹಾಗೂ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ ವಿದ್ಯಾರ್ಥಿಗಳಿಗೆ ವಸತಿ ಸ್ಥಳಗಳಾಗಿ ಮಾನ್ಯತೆ ನೀಡುವುದು;

(x) ವಸತಿಯ ಮೇಲ್ವಿಚಾರಣೆ ಮಾಡುವುದು ಮತ್ತು ನಿಯಂತ್ರಣ ಮಾಡುವುದು ಹಾಗೂ ವಿದ್ಯಾರ್ಥಿಗಳು ಮತ್ತು ಎಲ್ಲಾ ಪ್ರವರ್ಗಗಳ ಸಿಬ್ಬಂದಿಗಳಲ್ಲಿ ಶಿಸ್ತು ನಿಯಂತ್ರಣ ಮಾಡುವುದು ಮತ್ತು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ನಡತೆ ಸಂಹಿತೆಯನ್ನು ರೂಪಿಸುವುದೂ ಒಳಗೊಂಡಂತೆ, ಅಂಥ ಸಿಬ್ಬಂದಿಗಳ ಸೇವಾಷರತ್ತುಗಳನ್ನು ನಿರೂಪಿಸುವುದು;

(xi) ಶೈಕ್ಷಣಿಕ, ಆಡಳಿತಾತ್ಮಕ ಮತ್ತು ಬೆಂಬಲ ಸಿಬ್ಬಂದಿಯ ಹುದ್ದೆಗಳನ್ನು ಮತ್ತು ಇತರ ಅವಶ್ಯ ಹುದ್ದೆಗಳನ್ನು ಸೃಜಿಸುವುದು;

(xii) ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ಉದ್ದೇಶಗಳಿಗಾಗಿ ಇತರ ವಿಶ್ವವಿದ್ಯಾಲಯಗಳೊಡನೆ ಸಹಕರಿಸುವುದು ಮತ್ತು ಸಹಯೋಗ ಹೊಂದುವುದು;

(xiii) ಶಿಕ್ಷಕರಿಗೆ, ಪಾಠಗಳನ್ನು ರಚಿಸುವವರಿಗೆ, ಮೌಲ್ಯಮಾಪಕರಿಗೆ ಮತ್ತಿತರ ಶೈಕ್ಷಣಿಕ ಸಿಬ್ಬಂದಿಗೆ ಪುನರ್ಮನನ ವ್ಯಾಸಂಗಕ್ರಮಗಳು, ಅಭಿಮುಖಿ ವ್ಯಾಸಂಗ ಕ್ರಮಗಳು, ಕಾರ್ಯಾಗಾರಗಳು, ವಿಚಾರಗೋಷ್ಠಿಗಳು ಮತ್ತಿತರ ಕಾರ್ಯಕ್ರಮಗಳನ್ನು ಏರ್ಪಡಿಸುವುದು ಮತ್ತು ನಡೆಸುವುದು;

(xiv) ಶೈಕ್ಷಣಿಕ ಪರಿಷತ್ತಿನ ಅನುಮೋದನೆಯೊಂದಿಗೆ ವಿಶ್ವವಿದ್ಯಾಲಯಕ್ಕೆ ಅಥವಾ ಘಟಕ ಕಾಲೇಜಿಗೆ, ಪ್ರಾದೇಶಿಕ ಕೇಂದ್ರಗಳಿಗೆ, ಅಧ್ಯಯನ ಕೇಂದ್ರಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮತ್ತು ಈ ಅಧಿನಿಯಮದಲ್ಲಿ ಕಲ್ಪಿಸಿದ ವ್ಯಾಪ್ತಿಗಿಂತ ಕಡಿಮೆಯಿಲ್ಲದಂತೆ ಕರ್ನಾಟಕದ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮಾನಕ ಗುಣಮಟ್ಟಗಳನ್ನು ನಿರ್ಧರಿಸುವುದು;

(xv) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಕಾರ್ಯರೂಪಕ್ಕೆ ತರಲು ಅವಶ್ಯವಾಗಬಹುದಾದಂಥ ಇತರ ಎಲ್ಲಾ ಕ್ರಮಗಳನ್ನು ಅಥವಾ ಕಾರ್ಯಗಳನ್ನು, ಅವು ಮೇಲೆ ಹೇಳಿದ ಅಧಿಕಾರಗಳಿಗೆ ಪ್ರಾಸಂಗಿಕವಾಗಿರಲಿ ಅಥವಾ ಇಲ್ಲದಿರಲಿ, ಕೈಗೊಳ್ಳುವುದು;

(xvi) ಪರೀಕ್ಷೆಗಳ ಆಧಾರದ ಮೇಲೆ ಅಥವಾ ಸರ್ಕಾರದಿಂದ ಅನುಮೋದಿತವಾದ ಇತರ ಯಾವುದೇ ಮೌಲ್ಯಮಾಪನ ವಿಧಾನದ ಆಧಾರದ ಮೇಲೆ ನೀಡಲು ಪದವಿಗಳು, ಡಿಪ್ಲೋಮಾಗಳು, ಪ್ರಮಾಣಪತ್ರಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಸ್ಥಾಪಿಸುವುದು;

(xvii) ಫಿಲಂಗಳು, ಕ್ಯಾಸೆಟ್‌ಗಳು, ಧ್ವನಿಸುರುಳಿಗಳು, ದೃಶ್ಯಸುರುಳಿಗಳು, ಸಿ.ಡಿ., ವಿ.ಸಿ.ಡಿ. ಮತ್ತು ಇತರ ತಂತ್ರಾಂಶಗಳೂ ಹಾಗೂ ಇತರ ಸಂಬಂಧಿತ ವಿದ್ಯುನ್ಮಾನ ಮತ್ತು ಮುದ್ರಣ ಮಾಧ್ಯಮ ಸೇರಿದಂತೆ ಬೋಧಕ ಸಾಮಗ್ರಿಗಳನ್ನು ತಯಾರಿಸುವುದಕ್ಕಾಗಿ ಅವಕಾಶ ಕಲ್ಪಿಸುವುದು;

(xviii) ಪ್ರಬಂಧಕ ಮಂಡಳಿಯ ಅನುಮೋದನೆಯೊಡನೆ ವಿಶ್ವವಿದ್ಯಾಲಯದ ಉದ್ದೇಶಗಳಿಗಾಗಿ ವಿಶ್ವವಿದ್ಯಾಲಯದ ಸ್ವತ್ತುಗಳನ್ನು ಭದ್ರತೆಯಾಗಿ ನೀಡಿ ಅಥವಾ ನೀಡದೆ ಹಣವನ್ನು ಪಡೆಯುವುದು, ಸಂಗ್ರಹಿಸುವುದು, ಚಂದಾದಾರರಾಗುವುದು ಮತ್ತು ಸಾಲ ಪಡೆಯುವುದು;

(xix) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುದೇ ಇತರ ಶೈಕ್ಷಣಿಕ ಸಂಸ್ಥೆಗಳ ಆಡಳಿತವನ್ನು ವಶಪಡಿಸಿಕೊಳ್ಳುವುದು, ವಹಿಸಿಕೊಳ್ಳುವುದು ಮತ್ತು ನಡೆಸುವುದು;

(xx) ವ್ಯವಸ್ಥಾಪನಾ ಮಂಡಳಿಯ ಪೂರ್ವಾನುಮೋದನೆಯೊಂದಿಗೆ ಸ್ವತ್ತುಗಳನ್ನು ಆರ್ಜಿಸುವುದು;

(xxi) ವಿಶ್ವವಿದ್ಯಾಲಯದ ಮೇಲಿನ ಉದ್ದೇಶಗಳಿಗೆ ಸಂಬಂಧಿಸಿದ ಅಥವಾ ಪ್ರಾಸಂಗಿಕವಾದ ಯಾವುದೇ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು.

**9. ವಿಶ್ವವಿದ್ಯಾಲಯವು ಎಲ್ಲಾ ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲರಿಗೂ ಮುಕ್ತವಾಗಿರತಕ್ಕದ್ದು.–** ವಿಶ್ವವಿದ್ಯಾಲಯದ ಪ್ರವೇಶಗಳು ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲಾ ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು. ಎಲ್ಲಾ ಪ್ರವೇಶಗಳನ್ನು ಅರ್ಹತಾ ಪರೀಕ್ಷೆಗಳಲ್ಲಿನ ಅರ್ಹತೆಯ ಆಧಾರದ ಮೇಲೆ ಮಾಡತಕ್ಕದ್ದು:

ಪರಂತು, ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳ ಪ್ರವೇಶದಲ್ಲಿ ಶೇಕಡಾ ನಲವತ್ತರಷ್ಟನ್ನು ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ಮೀಸಲಿಡತಕ್ಕದ್ದು ಮತ್ತು ಪ್ರವೇಶಗಳನ್ನು ರಾಜ್ಯ ಸರ್ಕಾರವು ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡತಕ್ಕದ್ದು ಮತ್ತು ಸೀಟುಗಳನ್ನು ಅರ್ಹತ ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ರೂಪಿಸುವ ಮೀಸಲಾತಿ ನೀತಿಗೆ ಅನುಸಾರವಾಗಿ ಹಂಚಿಕೆ ಮಾಡತಕ್ಕದ್ದು:

ಮತ್ತು ಪರಂತು, ಯಾವುದೇ ಕೋರ್ಸಿನಲ್ಲಿ ಹತ್ತಕ್ಕಿಂತ ಕಡಿಮೆ ಸೀಟುಗಳು ಇರುವಲ್ಲಿ, ಸ್ನಾತಕೋತ್ತರ ಇಂಥ ಕೋರ್ಸುಗಳನ್ನು ಒಟ್ಟಿಗೆ ಒಂದುಗೂಡಿಸುವ ಮೂಲಕ ಮೀಸಲಿಡತಕ್ಕದ್ದು ಮತ್ತು ಯಾವುದೇ ಕೋರ್ಸಿನಲ್ಲಿ ಮೂರು ಸೀಟುಗಳಿಗಿಂತ ಕಡಿಮೆ ಇರುವಲ್ಲಿ, ಅವುಗಳನ್ನು ಸರದಿ ಸುತ್ತಿನಲ್ಲಿ ಮೀಸಲಿಡತಕ್ಕದ್ದು.

**10. ರಾಷ್ಟ್ರೀಯ ಅಧಿಮಾನ್ಯತೆ.–** ವಿಶ್ವವಿದ್ಯಾಲಯವು ಪ್ರಾರಂಭವಾದ ತರುವಾಯ ಆದಷ್ಟು ಬೇಗನೆ ಸಂಬಂಧಪಟ್ಟ ಶಾಸನಾತ್ಮಕ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳಿಂದ ಅಧಿಮಾನ್ಯತೆಯನ್ನು ಕೋರತಕ್ಕದ್ದು ಮತ್ತು ಖಾಸಗಿ ವಿಶ್ವವಿದ್ಯಾಲಯಗಳು ನಡೆಸುವ ಎಲ್ಲಾ ವ್ಯಾಸಂಗ ಕ್ರಮಗಳು ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ವಿನಿಯಮಗಳಿಗೆ ಅನುಸಾರವಾಗಿ ಇರತಕ್ಕದ್ದು.

**11. ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು.–** ಪ್ರಾಯೋಜಕ ಸಂಸ್ಥೆಯು ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದಂತೆ ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಇವುಗಳಲ್ಲಿ ಪ್ರತಿಯೊಂದನ್ನು ಪ್ರಾಯೋಜಕ ಸಂಸ್ಥೆಯು ತನ್ನ ವಿವೇಚನಾನುಸಾರ ಚಲಾಯಿಸಬಹುದು, ಎಂದರೆ:-

(i) ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಪುನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(ii) ವಿಶ್ವವಿದ್ಯಾಲಯದ ಪ್ರಥಮ ಪ್ರಬಂಧಕ ಮಂಡಳಿಯನ್ನು ರಚಿಸುವುದು;

(iii) ಪ್ರಬಂಧಕ ಮಂಡಳಿಯ ಅಧ್ಯಕ್ಷರನ್ನು ನಾಮನಿರ್ದೇಶಿಸುವುದು;

(iv) ಪ್ರಬಂಧಕ ಮಂಡಳಿಯ ಸದಸ್ಯರಾಗಿ ಮೂರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(v) ವ್ಯವಸ್ಥಾಪನಾ ಮಂಡಳಿಯ ಸದಸ್ಯರಾಗಿ ಇಬ್ಬರು ವ್ಯಕ್ತಿಗಳನ್ನು ನಾಮ ನಿರ್ದೇಶಿಸುವುದು;

(vi) ವಿಶ್ವವಿದ್ಯಾಲಯದ ದತ್ತಿ ನಿಧಿಗೆ ದೇಣಿಗೆ ನೀಡಲು ನಿಧಿ ಮೂಲಗಳನ್ನು ನಿರ್ಧರಿಸುವುದು;

(vii) ವಿಶ್ವವಿದ್ಯಾಲಯದ ಹಣದ ವಿನಿಯೋಗ ಮತ್ತು ವೆಚ್ಚ ಮಾಡುವುದನ್ನು ನಿರ್ಧರಿಸುವುದು;

(viii) ಈ ಅಧಿನಿಯಮದಲ್ಲಿ ಉಪಬಂಧಿಸಿರುವ ವಿಧಾನದಲ್ಲಿ ಪ್ರಬಂಧಕ ಮಂಡಳಿಯ ಸಭೆಯಲ್ಲಿಯ ವಿವಾದಗಳನ್ನು ಬಗೆಹರಿಸುವುದು;

## ಅಧ್ಯಾಯ – III

## ವಿಶ್ವವಿದ್ಯಾಲಯದ ಅಧಿಕಾರಿಗಳು

**12. ವಿಶ್ವವಿದ್ಯಾಲಯದ ಅಧಿಕಾರಿಗಳು.–** ಈ ಮುಂದಿನವರು ವಿಶ್ವವಿದ್ಯಾಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:–

(i) ಸಂದರ್ಶಕರು;

(ii) ಸಹ–ಸಂದರ್ಶಕರು;

(iii) ಕುಲಾಧಿಪತಿಗಳು;

(iv) ಕುಲಪತಿಗಳು;

(v) ಸಹಕುಲಪತಿಗಳು;

(vi) ಕುಲಸಚಿವರು;

(vii) ಹಣಕಾಸು ಅಧಿಕಾರಿ; ಮತ್ತು

(viii) ಪರಿನಿಯಮಗಳ ಮೂಲಕ ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಘೋಷಿಸಬಹುದಾದಂಥ ಇತರ ಅಧಿಕಾರಿಗಳು.

**13. ಸಂದರ್ಶಕರು.–** (1) ಕರ್ನಾಟಕದ ಘನತೆವೆತ್ತ ರಾಜ್ಯಪಾಲರು ವಿಶ್ವವಿದ್ಯಾಲಯದ ಸಂದರ್ಶಕರಾಗಿರತಕ್ಕದ್ದು ಮತ್ತು ಸಂದರ್ಶಕರು ವಿಶ್ವವಿದ್ಯಾಲಯದ ಕಾರ್ಯನಿರ್ವಹಣೆಯ ಸುಧಾರಣೆಗಾಗಿ ಸಲಹೆಗಳನ್ನು ನೀಡಬಹುದು.

(2) ಸಂದರ್ಶಕರು, ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಸಂದರ್ಶಕರು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ವ್ಯವಹಾರಗಳಿಗೆ ಸಂಬಂಧಿಸಿದಂತೆ, ಯಾವುದೇ ಪತ್ರ ಅಥವಾ ಮಾಹಿತಿಯನ್ನು ತರಿಸಿಕೊಳ್ಳುವುದು.

(ii) ಸಂದರ್ಶಕರು, ಅವರು ಸ್ವೀಕರಿಸಿದ ಮಾಹಿತಿಯ ಆಧಾರದ ಮೇಲೆ ವಿಶ್ವವಿದ್ಯಾಲಯಗಳ ಯಾವುದೇ ಪ್ರಾಧಿಕಾರವು ಮಾಡಿದ ಯಾವುದೇ ಆದೇಶ, ನಡೆಸಿದ ವ್ಯವಹರಣೆಗಳು ಅಥವಾ ಕೈಗೊಂಡ ತೀರ್ಮಾನಗಳು, ಈ ಅಧಿನಿಯಮ, ವಿನಿಯಮಗಳು ಅಥವಾ ನಿಯಮಗಳಿಗೆ ಪೂರಕವಾಗಿಲ್ಲವೆಂದು ಮನಗಂಡರೆ ಅವರು ವಿಶ್ವವಿದ್ಯಾಲಯದ ಹಿತಾಸಕ್ತಿಯಿಂದ ತಾವು ಸೂಕ್ತವೆಂದು ಭಾವಿಸಬಹುದಾದಂಥ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಹಾಗೆ ಹೊರಡಿಸಿದ ನಿರ್ದೇಶನಗಳನ್ನು ಸಂಬಂಧಪಟ್ಟವರೆಲ್ಲರೂ ಪಾಲಿಸತಕ್ಕದ್ದು.

**14. ಸಹ–ಸಂದರ್ಶಕರು.–** (1) ಕರ್ನಾಟಕ ಸರ್ಕಾರದ ಮಾನ್ಯ ಉನ್ನತ ಶಿಕ್ಷಣ ಸಚಿವರು ವಿಶ್ವವಿದ್ಯಾಲಯದ ಸಹ–ಸಂದರ್ಶಕರಾಗಿರತಕ್ಕದ್ದು.

(2) ಸಂದರ್ಶಕರ ಅನುಪಸ್ಥಿತಿಯಲ್ಲಿ ಸಹ-ಸಂದರ್ಶಕರು ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**15. ಕುಲಾಧಿಪತಿಗಳು.**- (1) ಕುಲಾಧಿಪತಿಯವರನ್ನು ಪ್ರಾಯೋಜಕ ಸಂಸ್ಥೆಯು ನೇಮಿಸತಕ್ಕದ್ದು.

(2) ಪ್ರಾಯೋಜಕ ಸಂಸ್ಥೆಯ ಸಂಸ್ಥಾಪಿತ ನ್ಯಾಸಧಾರಿಯು ಮೊದಲನೇ ಕುಲಾಧಿಪತಿಗಳಾಗಿರತಕ್ಕದ್ದು, ಅವರು ತಮ್ಮ ಜೀವನಪರ್ಯಂತ ಅಥವಾ ಅವರು ತಮ್ಮ ಪದವನ್ನು ಬಿಟ್ಟುಕೊಡುವವರೆಗೆ ಕುಲಾಧಿಪತಿಗಳಾಗಿ ಪದಧಾರಣ ಮಾಡಿರತಕ್ಕದ್ದು.

(3) ತದನಂತರದ ಕುಲಾಧಿಪತಿಗಳು, ಅಂಥ ನೇಮಕಾತಿಯನ್ನು ಪರಿಗಣಿಸುವ ಸಂದರ್ಭದಲ್ಲಿ ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ, ಪ್ರಾಯೋಜಕ ಸಂಸ್ಥೆಯ ನ್ಯಾಸಧಾರಿಯಾಗಿರತಕ್ಕದ್ದು ಅಥವಾ ಶಿಕ್ಷಣ, ವಿಜ್ಞಾನ, ಸಂಸ್ಕೃತಿ ಅಥವಾ ಸಾರ್ವಜನಿಕ ಜೀವನ ಕ್ಷೇತ್ರಗಳಲ್ಲಿ ರಾಷ್ಟ್ರೀಯ ಮಟ್ಟದ ಛಾಪನ್ನು ಪಡೆದಿರುವ ಅಂಥ ಇತರ ವ್ಯಕ್ತಿಯಾಗಿರತಕ್ಕದ್ದು.

(4) ಹಾಗೆ ನೇಮಕಗೊಂಡ ತದನಂತರದ ಕುಲಾಧಿಪತಿಗಳು ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ಪದಧಾರಣ ಮಾಡತಕ್ಕದ್ದು.

(5) ಕುಲಾಧಿಪತಿಗಳು ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳ ಅಡಿಯಲ್ಲಿ ಅವರಿಗೆ ಪ್ರದಾನ ಮಾಡಬಹುದಾದಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು, ಅವುಗಳಲ್ಲಿ ಈ ಮುಂದಿನ ಅಧಿಕಾರಗಳು ಒಳಗೊಂಡಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುವುದು;

(ii) ಸಂದರ್ಶಕರ ಮತ್ತು ಸಹ-ಸಂದರ್ಶಕರಿಬ್ಬರ ಗೈರುಹಾಜರಿಯಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಘಟಿಕೋತ್ಸವಗಳಲ್ಲಿ ಅಧ್ಯಕ್ಷತೆಯನ್ನು ವಹಿಸುವುದು;

(iii) ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವುದು;

(iv) ಈ ಅಧಿನಿಯಮ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಅನುಸಾರವಾಗಿ ಕುಲಪತಿಗಳನ್ನು ನೇಮಿಸುವುದು ಅಥವಾ ಪುನರ್ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(v) ಈ ಅಧಿನಿಯಮದ 16ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ನಾಮನಿರ್ದೇಶಕ ಸಮಿತಿಯ ಸದಸ್ಯರಾಗಿ ಒಬ್ಬ ವ್ಯಕ್ತಿಯನ್ನು ನಾಮನಿರ್ದೇಶನ ಮಾಡುವುದು;

(vi) ಸಹಕುಲಪತಿಗಳು, ಡೀನ್, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿಗಳ ನೇಮಕಾತಿಯನ್ನು ಪೂರ್ವಾನುಮೋದಿಸುವುದು;

(vii) ಪ್ರಬಂಧಕ ಮಂಡಳಿಯ ಸದಸ್ಯರನ್ನಾಗಿ ಇಬ್ಬರು ಶಿಕ್ಷಣ ತಜ್ಞರನ್ನು ನಾಮನಿರ್ದೇಶಿಸುವುದು;

(viii) ಮೊದಲ ಸಹಕುಲಪತಿಗಳು ಮತ್ತು ಹಣಕಾಸು ಅಧಿಕಾರಿಗಳನ್ನು ನೇಮಿಸುವುದು;

(ix) ಮೊದಲ ವ್ಯವಸ್ಥಾಪನಾ ಮಂಡಳಿ, ಹಣಕಾಸು ಸಮಿತಿ, ಸಂಶೋಧನಾ ಪರಿಷತ್ತು ಹಾಗೂ ಶೈಕ್ಷಣಿಕ ಪರಿಷತ್ತುಗಳನ್ನು ರಚಿಸುವುದು;

(x) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ ಕಾರ್ಯಸೂಚಿ ವಿಷಯಗಳನ್ನು ಪೂರ್ವಾನುಮೋದಿಸುವುದು;

(xi) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ (ಪ್ರಬಂಧಕ ಮಂಡಳಿಯ ಸಭೆಯಲ್ಲಿ ಉಂಟಾದ ವಿವಾದಗಳನ್ನು ಹೊರತುಪಡಿಸಿ) ವಿವಾದಗಳನ್ನು ಪರಿಹರಿಸುವುದು.

(6) ಪದಾಧಿಕಾರಿ ಅಥವಾ ಸಂಸ್ಥೆ ಮತ್ತು ವಿಶ್ವವಿದ್ಯಾಲಯದ ಯಾವುದೇ ಇತರ ಪದಾಧಿಕಾರಿ ಅಥವಾ ಸಂಸ್ಥೆಯ ನಡುವೆ ವಿವಾದಗಳು ಉಂಟಾದಲ್ಲಿ, ಆ ವಿವಾದವನ್ನು ಕುಲಾಧಿಪತಿಯವರ ಪರ್ಯಾಲೋಚನೆಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿವಾದದ ಸಂದರ್ಭದಲ್ಲಿ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**16. ಕುಲಪತಿಗಳು.**- (1) (2)ನೇ ಉಪಪ್ರಕರಣದ ಉಪಬಂಧಗಳಿಗೆ ಅನುಸಾರವಾಗಿ ನಾಮನಿರ್ದೇಶಕ ಸಮಿತಿಯು ಶಿಫಾರಸ್ಸು ಮಾಡಿದ ಮೂರು ವ್ಯಕ್ತಿಗಳ ಪೈಕಿಯಿಂದ ಒಬ್ಬರನ್ನು ಮೂರು ವರ್ಷಗಳ ಅವಧಿಗಾಗಿ ಕುಲಪತಿಗಳನ್ನಾಗಿ,

ಪರಿನಿಯಮಗಳಲ್ಲಿ ನಿಯಮಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರು ನೇಮಿಸತಕ್ಕದ್ದು. ಮೂರು ವರ್ಷಗಳ ಅವಧಿಯು ಮುಗಿದ ತರುವಾಯ, ಇದನ್ನು ಮೂರು ವರ್ಷಗಳ ಮತ್ತೊಂದು ಅವಧಿಗೆ ನವೀಕರಿಸಬಹುದು:

ಪರಂತು, ಕುಲಪತಿಯವರು, ತಮ್ಮ ಅವಧಿ ಮುಗಿದ ನಂತರವೂ ಹೊಸ ಕುಲಪತಿಯವರು ಸೇರಿಕೊಳ್ಳುವವರೆಗೆ ಪದದಲ್ಲಿ ಮುಂದುವರೆಯತಕ್ಕದ್ದು. ಆದಾಗ್ಯೂ ಈ ಅವಧಿಯು ಯಾವುದೇ ಸಂದರ್ಭದಲ್ಲಿ ಒಂದು ವರ್ಷವನ್ನು ಮೀರತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಹೇಳಿರುವ ನಾಮನಿರ್ದೇಶಕ ಸಮಿತಿಯಲ್ಲಿ ಈ ಮುಂದಿನ ವ್ಯಕ್ತಿಗಳು ಇರತಕ್ಕದ್ದು, ಎಂದರೆ:-

(i) ಕುಲಾಧಿಪತಿಯವರು ನಾಮನಿರ್ದೇಶಿಸಿದ ಒಬ್ಬ ವ್ಯಕ್ತಿ;

(ii) ಪ್ರಬಂಧಕ ಮಂಡಳಿಯ ಇಬ್ಬರು ನಾಮ ನಿರ್ದೇಶಿತರು, ಇವರಲ್ಲಿ ಒಬ್ಬರನ್ನು ಪ್ರಬಂಧಕ ಮಂಡಳಿಯು ಸಮಿತಿಯ ಸಂಚಾಲಕರೆಂದು ನಾಮನಿರ್ದೇಶಿಸತಕ್ಕದ್ದು.

(3) ನಾಮನಿರ್ದೇಶಕ ಸಮಿತಿಯು, ಅರ್ಹತೆಯ ಆಧಾರದ ಮೇಲೆ ಕುಲಪತಿಯ ಹುದ್ದೆಗೆ ಸೂಕ್ತವಾದ ಮೂರು ವ್ಯಕ್ತಿಗಳ ಹೆಸರನ್ನು ಶಿಫಾರಸ್ಸು ಮಾಡತಕ್ಕದ್ದು ಮತ್ತು ಅದನ್ನು ಪ್ರತಿಯೊಬ್ಬ ವ್ಯಕ್ತಿಯ ವಿದ್ಯಾರ್ಹತೆ ಮತ್ತಿತರ ವಿಶಿಷ್ಟ ಪ್ರಶಸ್ತಿಗಳನ್ನು ತಿಳಿಸುವ ಒಂದು ಸಂಕ್ಷಿಪ್ತ ವರದಿಯೊಂದಿಗೆ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು.

(4) ಕುಲಪತಿಯವರು ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಾಹಕ ಮತ್ತು ಶೈಕ್ಷಣಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣವನ್ನು ಚಲಾಯಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯದ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೊಳಿಸತಕ್ಕದ್ದು:

ಪರಂತು, ಶಿಕ್ಷಕರ ನೇಮಕಾತಿಯನ್ನು ಹೊರತುಪಡಿಸಿ ಕೂಡಲೇ ಕ್ರಮವನ್ನು ಕೈಗೊಳ್ಳಬೇಕಾದ ತುರ್ತು ಸ್ವರೂಪದ ಯಾವುದೇ ಇತರ ವಿಷಯಗಳಲ್ಲಿ ಮತ್ತು ಅದನ್ನು ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ವಿಶ್ವವಿದ್ಯಾಲಯವು ಇದಕ್ಕಾಗಿ ಅಧಿಕೃತಗೊಳಿಸಿದ್ದ ಯಾವೊಬ್ಬ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ಇತರ ಸಂಸ್ಥೆಯು ಕೂಡಲೇ ಕ್ರಮಕೈಗೊಳ್ಳುವುದು ಸಾಧ್ಯವಿರದಿರುವಾಗ ಕುಲಪತಿಯವರು ತಾನು ಸೂಕ್ತವೆಂದು ಭಾವಿಸಬಹುದಾದಂತಹ ಕ್ರಮವನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆದು ಕೈಗೊಳ್ಳತಕ್ಕದ್ದು.

(5) ಕುಲಪತಿಯವರು ಪರಿನಿಯಮಗಳು ಅಥವಾ ನಿಯಮಗಳಲ್ಲಿ ಹೇಳಲಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು:

ಪರಂತು, ಕುಲಪತಿಗಳ ಅಭಿಪ್ರಾಯದಲ್ಲಿ, ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಯಾವುದೇ ನಿರ್ಣಯವು, ಈ ಅಧಿನಿಯಮ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳು, ವಿನಿಯಮಗಳು ಅಥವಾ ನಿಯಮಗಳ ಮೂಲಕ ಪ್ರದತ್ತವಾದ ಅಧಿಕಾರದ ಹೊರಗಿದ್ದರೆ ಅಥವಾ ವಿಶ್ವವಿದ್ಯಾಲಯದ ಹಿತಾಸಕ್ತಿಗೆ ಪ್ರತಿಕೂಲವಾಗಬಹುದಾಗಿದ್ದರೆ, ಅದರ ನಿರ್ಣಯದ ದಿನಾಂಕದಿಂದ ಹದಿನೈದು ದಿನಗಳ ಒಳಗೆ ತನ್ನ ನಿರ್ಣಯವನ್ನು ಪರಿಷ್ಕರಿಸಲು ಸಂಬಂಧಪಟ್ಟ ಪ್ರಾಧಿಕಾರವನ್ನು ಆತನು ಕೋರತಕ್ಕದ್ದು ಮತ್ತು ಪ್ರಾಧಿಕಾರವು ಅಂಥ ನಿರ್ಣಯವನ್ನು ಸಂಪೂರ್ಣವಾಗಿ ಅಥವಾ ಭಾಗಶಃವಾಗಿ ಪರಿಷ್ಕರಿಸಲು ನಿರಾಕರಿಸಿದ ಸಂದರ್ಭದಲ್ಲಿ ಅಥವಾ ಹದಿನೈದು ದಿನಗಳೊಳಗೆ ಯಾವುದೇ ನಿರ್ಣಯವನ್ನು ತೆಗೆದುಕೊಳ್ಳಲು ವಿಫಲವಾದಲ್ಲಿ, ನಂತರ ಅಂಥ ವಿಷಯವನ್ನು ಕುಲಾಧಿಪತಿಗಳಿಗೆ ಕಳುಹಿಸತಕ್ಕದ್ದು ಮತ್ತು ಈ ಬಗ್ಗೆ ಇವರ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

(6) ಕುಲಪತಿಯವರ ಸೇವೆಗಳನ್ನು, ಪ್ರಬಂಧಕ ಮಂಡಳಿಯ ಅನುಮೋದನೆಯೊಂದಿಗೆ ಮತ್ತು ಸಹಜ ನ್ಯಾಯದ ತತ್ವಗಳನ್ನು ಅನುಸರಿಸಿದ ನಂತರ ಹಾಗೂ ಶಿಸ್ತಿನ ಆಧಾರದ ಮೇಲೆ ಅಂತ್ಯಗೊಳಿಸುವ ಸಂದರ್ಭವೂ ಸೇರಿದಂತೆ, ಪ್ರಕರಣದ ಬಗ್ಗೆ ಕುಲಪತಿಯು ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡಿದ ತರುವಾಯ, ಕುಲಾಧಿಪತಿಯವರು ಅಂತ್ಯಗೊಳಿಸಬಹುದು.

(7) ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಸಂದರ್ಶಕರು, ಸಹ-ಸಂದರ್ಶಕರು ಮತ್ತು ಕುಲಾಧಿಪತಿಯವರು ಇವರುಗಳ ಗೈರು ಹಾಜರಿಯ ಸಂದರ್ಭದಲ್ಲಿ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**17. ಸಹಕುಲಪತಿಗಳು.-** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಮೂರು ಜನರನ್ನು ಮೀರದಂತೆ ಸಹಕುಲಪತಿಗಳನ್ನು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ

ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

18. ವ್ಯಾಸಂಗ ವಿಭಾಗಗಳ ಡೀನ್‌ಗಳು.– ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಪರಿನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವ್ಯಾಸಂಗ ವಿಭಾಗಗಳ ಡೀನ್‌ಗಳನ್ನು ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**19. ಕುಲಸಚಿವರು.–** (1) ಕುಲಾಧಿಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಸಚಿವರನ್ನು ನೇಮಕ ಮಾಡತಕ್ಕದ್ದು.

(2) ಪರಿನಿಯಮಗಳಲ್ಲಿ ಪರಿಭಾಷಿಸಿರುವಂಥ ಎಲ್ಲಾ ಕರಾರುಗಳನ್ನು ವಿಶ್ವವಿದ್ಯಾಲಯದ ಪರವಾಗಿ ಕುಲಸಚಿವರು ಮಾಡಿಕೊಳ್ಳತಕ್ಕದ್ದು ಮತ್ತು ಅದಕ್ಕೆ ಸಹಿ ಹಾಕತಕ್ಕದ್ದು.

(3) ಕುಲಸಚಿವರು ವಿಶ್ವವಿದ್ಯಾಲಯದ ಪರವಾಗಿ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಪರಿನಿಯಮಗಳಿಂದ ಪ್ರದತ್ತಗೊಳಿಸಬಹುದಾದಂಥ ಅಥವಾ ಕುಲಾಧಿಪತಿಯವರು ಮತ್ತು ಕುಲಪತಿಯವರು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು ವಿಶ್ವವಿದ್ಯಾಲಯದ ದಾಖಲೆಗಳು ಮತ್ತು ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು, ಕುಲಪತಿಯವರು ಅಥವಾ ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಅಂಥ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿತಕ್ಕದ್ದು.

**20. ಹಣಕಾಸು ಅಧಿಕಾರಿ.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು, ಪರಿನಿಯಮಗಳ ಮೂಲಕ ಪ್ರದತ್ತಗೊಳಿಸಬಹುದಾದ ಅಂಥ ವಿಧಾನದಲ್ಲಿ ಹಣಕಾಸು ಅಧಿಕಾರಿಯನ್ನು ನೇಮಕ ಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**21. ಇತರ ಅಧಿಕಾರಿಗಳು.–** ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ ನೇಮಕಾತಿಯ ವಿಧಾನ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಕರ್ತವ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ – IV

## ವಿಶ್ವವಿದ್ಯಾಲಯದ ಪ್ರಾಧಿಕಾರಗಳು

**22. ವಿಶ್ವವಿದ್ಯಾಲಯದ ಪ್ರಾಧಿಕಾರಗಳು.–** ಈ ಮುಂದಿನವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:–

(i) ಪ್ರಬಂಧಕ ಮಂಡಳಿ;

(ii) ವ್ಯವಸ್ಥಾಪನ ಮಂಡಳಿ;

(iii) ಶೈಕ್ಷಣಿಕ ಪರಿಷತ್ತು;

(iv) ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು;

(v) ಹಣಕಾಸು ಸಮಿತಿ; ಮತ್ತು

(vi) ವಿಶ್ವವಿದ್ಯಾಲಯದ ಪ್ರಾಧಿಕಾರಗಳೆಂದು ಪರಿನಿಯಮಗಳ ಮೂಲಕ ಘೋಷಿಸಬಹುದಾದ ಅಂಥ ಇತರ ಪ್ರಾಧಿಕಾರಗಳು.

**23. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು.–** (1) ಪ್ರಬಂಧಕ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು – ಅಧ್ಯಕ್ಷರು;

(ii) ಕುಲಪತಿಯವರು – ಸದಸ್ಯರು;

(iii) ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(iv) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(v) ರಾಜ್ಯ ಸರ್ಕಾರವು ನಾಮ ನಿರ್ದೇಶನ ಮಾಡಿದ ಆಡಳಿತವನ್ನು ಒಳಗೊಂಡಂತೆ ವ್ಯವಸ್ಥಾಪನೆ, ಹಣಕಾಸು ಅಥವಾ ಯಾವುದೇ ಇತರ ವಿಶೇಷ ಕ್ಷೇತ್ರದಲ್ಲಿನ ಒಬ್ಬರು ತಜ್ಞರು;

(vi) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಇಬ್ಬರು ವ್ಯಕ್ತಿಗಳು ಅವರ ಪೈಕಿ ಒಬ್ಬರು ಮಹಿಳೆಯಾಗಿರತಕ್ಕದ್ದು;

(vii) ಸಹ ಕುಲಪತಿಯವರು ಮತದಾನದ ಹಕ್ಕಿಲ್ಲದ ಸದಸ್ಯರಾಗಿರತಕ್ಕದ್ದು;

(viii) ವಿಶ್ವವಿದ್ಯಾಲಯ ಅನುದಾನ ಆಯೋಗದ ನಾಮನಿರ್ದೇಶಿತ ಒಬ್ಬ ಸುಪ್ರಸಿದ್ಧ ಶಿಕ್ಷಣ ತಜ್ಞರು.

(2) ಕುಲಸಚಿವರು ಪ್ರಬಂಧಕ ಮಂಡಳಿಯ ಮತ ದಾನದ ಹಕ್ಕಿರದ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ಪ್ರಬಂಧಕ ಮಂಡಳಿಯ ಸದಸ್ಯರ ಪದಾವಧಿ; ಸರ್ಕಾರದಿಂದ ನಾಮನಿರ್ದೇಶಿತರಾದ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ನೇಮಕಾತಿ, ನವೀಕರಣ ಮತ್ತು ತೆಗೆದುಹಾಕುವುದು ಮುಂತಾದವುಗಳು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಾಧಿಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರ ಗೈರುಹಾಜರಿಯಲ್ಲಿ ಕುಲಾಧಿಪತಿಯವರಿಂದ ನಾಮನಿರ್ದೇಶಿತರಾದ ಯಾರಾದರೂ ಒಬ್ಬರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು. ಅಂಥ ಸಭೆಯ ಅಧ್ಯಕ್ಷತೆಯನ್ನು ವಹಿಸುವುದಕ್ಕೆ ಕುಲಾಧಿಪತಿಯವರು ಯಾವೊಬ್ಬ ವ್ಯಕ್ತಿಯನ್ನೂ ನಾಮನಿರ್ದೇಶನ ಮಾಡಿರದಿದ್ದಲ್ಲಿ, ಸಭೆಯಲ್ಲಿ ಹಾಜರಿರುವ ಸದಸ್ಯರು ಸರಳ ಬಹುಮತದ ಮೂಲಕ ಅವರುಗಳ ಪೈಕಿಯಿಂದಲೇ ಆ ಸಭೆಗೆ ಮಾತ್ರವೇ ಅಧ್ಯಕ್ಷನನ್ನು ಚುನಾಯಿಸತಕ್ಕದ್ದು.

(5) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಿಗೆ, ಅಂಥ ಸಭೆಯಲ್ಲಿ ಹಾಜರಾಗುವ ಮತ್ತು ಮತದಾನ ನೀಡುವ ಮೂರು ಜನ ಸದಸ್ಯರು ಗಣಪೂರ್ತಿ (ಕೋರಂ) ಆಗಿರತಕ್ಕದ್ದು:

ಪರಂತು, ಪ್ರಬಂಧಕ ಮಂಡಳಿಯ ಯಾವುದೇ ಸಭೆಯ ಕೋರಂ ಪೂರ್ಣವಾಗಬೇಕಾದರೆ ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಿರುವುದು ಮತ್ತು ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ನಾಮನಿರ್ದೇಶಿತರು ಹಾಜರಾಗದೇ ಇದ್ದಾಗ ಕುಲಪತಿಯವರು ಹಾಜರಿರುವುದು ಯಾವಾಗಲೂ ಅವಶ್ಯವಾಗಿರತಕ್ಕದ್ದು.

(6) ಪ್ರಬಂಧಕ ಮಂಡಳಿಯು ವಿಶ್ವವಿದ್ಯಾಲಯದ ಪ್ರಧಾನ ಪ್ರಬಂಧಕ ಸಂಸ್ಥೆಯಾಗಿರತಕ್ಕದ್ದು ಮತ್ತು ಅದು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಕಗೊಳಿಸುವುದು;

(ii) ವಿಶ್ವವಿದ್ಯಾಲಯವು ಅನುಸರಿಸಬೇಕಾದ ಕಾರ್ಯನೀತಿಗಳನ್ನು ರಚಿಸುವುದು;

(iii) ಈ ಅಧಿನಿಯಮದ ಅಥವಾ ಪರಿನಿಯಮಗಳ ಅಥವಾ ನಿಯಮಗಳ ಉಪಬಂಧಗಳಿಗೆ ಅನುಗುಣವಾಗಿ ಇರದ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ತೀರ್ಮಾನಗಳನ್ನು ಪುನರೀಕ್ಷಿಸುವುದು;

(iv) ವಿಶ್ವವಿದ್ಯಾಲಯದ ಆಯವ್ಯಯ ಮತ್ತು ವಾರ್ಷಿಕ ವರದಿಗಳನ್ನು ಅನುಮೋದಿಸುವುದು;

(v) ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸುವುದು ಅಥವಾ ಈಗಾಗಲೇ ಇರುವ ಪರಿನಿಯಮಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವುದು ಅಥವಾ ನಿರಸನಗೊಳಿಸುವುದು;

(vi) ವಿಶ್ವವಿದ್ಯಾಲಯವನ್ನು ಸ್ವಯಂಸಮಾಪನಗೊಳಿಸುವ ನಿರ್ಧಾರವನ್ನು ತೆಗೆದುಕೊಳ್ಳುವುದು;

(vii) ಸರ್ಕಾರಕ್ಕೆ ಸಲ್ಲಿಸುವ ಪ್ರಸ್ತಾವಗಳನ್ನು ಅನುಮೋದಿಸುವುದು;

(viii) ಶುಲ್ಕ ನಿಯಂತ್ರಣ ಸಮಿತಿಗೆ ಮೂವರು ಸದಸ್ಯರನ್ನು ನಾಮನಿರ್ದೇಶನ ಮಾಡುವುದು;

(ix) ವಿಶ್ವವಿದ್ಯಾಲಯದ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕೆ ಅಪೇಕ್ಷಣೀಯವೆಂದು ಕಂಡುಬರುವಂಥ ತೀರ್ಮಾನಗಳನ್ನು ಮತ್ತು ಕ್ರಮಗಳನ್ನು ಕೈಗೊಳ್ಳುವುದು.

(7) ಪ್ರಬಂಧಕ ಮಂಡಳಿಯು ಒಂದು ವರ್ಷದಲ್ಲಿ ಕನಿಷ್ಠ ಮೂರು ಸಲ ಸಭೆ ಸೇರತಕ್ಕದ್ದು.

**24. ವ್ಯವಸ್ಥಾಪನಾ ಮಂಡಳಿ.–** (1) ವ್ಯವಸ್ಥಾಪನಾ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಗಳು;

(ii) ಸಹಕುಲಪತಿಗಳು;

(iii) ಕುಲಸಚಿವರು;

(iv) ಪ್ರಾಯೋಜಕ ಸಂಸ್ಥೆಯ ಇಬ್ಬರು ನಾಮನಿರ್ದೇಶಿತರು;

(v) ಕುಲಪತಿಗಳು ನಾಮನಿರ್ದೇಶಿಸಬಹುದಾದ ವಿದ್ಯಾಲಯಗಳ ಇಬ್ಬರು ಡೀನ್‌ಗಳು;

(2) ಕುಲಪತಿಯವರು ವ್ಯವಸ್ಥಾಪನಾ ಮಂಡಳಿಯ ಅಧ್ಯಕ್ಷರಾಗಿರತಕ್ಕದ್ದು ಮತ್ತು ಕುಲಸಚಿವರು ವ್ಯವಸ್ಥಾಪನಾ ಮಂಡಳಿಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ವ್ಯವಸ್ಥಾಪನಾ ಮಂಡಳಿಯು ವಿಶ್ವವಿದ್ಯಾಲಯದ ಕಾರ್ಯನಿರ್ವಾಹಕ ಸಂಸ್ಥೆಯಾಗಿರತಕ್ಕದ್ದು. ವ್ಯವಸ್ಥಾಪನಾ ಮಂಡಳಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ವ್ಯವಸ್ಥಾಪನಾ ಮಂಡಳಿಯ ಎಲ್ಲಾ ಸಭೆಗಳಲ್ಲಿ ಯಾವಾಗಲೂ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು ಹಾಗೂ ಕುಲಪತಿಯವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೇ ಇದ್ದ ಸಂದರ್ಭದಲ್ಲಿ ಸಭೆಯಲ್ಲಿ ಹಾಜರಿರುವ ಸದಸ್ಯರು ಚುನಾಯಿಸಿದ ಯಾವುದೇ ಇತರ ಸದಸ್ಯರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ವ್ಯವಸ್ಥಾಪನಾ ಮಂಡಳಿಯ ಸಭೆಯಲ್ಲಿ ಯಾವುದೇ ವಿಷಯವನ್ನು ಕುರಿತು ವಿವಾದ ಉಂಟಾದಲ್ಲಿ ಸದರಿ ವಿಷಯವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯದ ಬಗ್ಗೆ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**25. ಶೈಕ್ಷಣಿಕ ಪರಿಷತ್ತು.–**(1) ಶೈಕ್ಷಣಿಕ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಕಾರ್ಯದರ್ಶಿಗಳು

(iv) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಶೈಕ್ಷಣಿಕ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಶೈಕ್ಷಣಿಕ ಸಂಸ್ಥೆಯಾಗಿರತಕ್ಕದ್ದು ಮತ್ತು ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಹಾಗೂ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**26. ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು.–** (1) ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಸಂಶೋಧನೆ ಮತ್ತು ಅನ್ವೇಷಣಾ ಸಮಿತಿಯಾಗಿರತಕ್ಕದ್ದು ಹಾಗೂ ಸಂಶೋಧನೆ ಮತ್ತು ಅನ್ವೇಷಣಾ ಕ್ಷೇತ್ರಗಳ ಆದ್ಯತೆಯೂ ಒಳಗೊಂಡಂತೆ, ವಿಶ್ವವಿದ್ಯಾಲಯವು ಕೈಗೊಳ್ಳಬೇಕಾದ ಸಂಶೋಧನೆ ಮತ್ತು ಅನ್ವೇಷಣೆಯ ಬಗ್ಗೆ ಒಂದು ವ್ಯಾಪಕವಾದ ಪರಿಪೂರ್ಣ ಭವಿಷ್ಯದ್ ದೃಷ್ಟಿಯನ್ನು ಒದಗಿಸತಕ್ಕದ್ದು. ಈ ಪರಿಷತ್ತು, ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಮತ್ತು ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಸಂಶೋಧನೆ ಮತ್ತು ಅನ್ವೇಷಣಾ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

| | | |
|---|---|---|
| (i) | ಕುಲಪತಿಯವರು | – ಅಧ್ಯಕ್ಷರು |
| (ii) | ಸಹಕುಲಪತಿಯವರು | – ಸದಸ್ಯರು |
| (iii) | ಸಂಶೋಧನೆಯ ಡೀನ್ | – ಕಾರ್ಯದರ್ಶಿ |
| (iv) | ಅನ್ವೇಷಣಾ ವಿಭಾಗದ ಮುಖ್ಯಸ್ಥರು | – ಸದಸ್ಯರು |
| (v) | ಎಲ್ಲಾ ವ್ಯಾಸಂಗ ವಿಭಾಗಗಳ ಡೀನ್‌ಗಳು | – ಸದಸ್ಯರು ಮತ್ತು |
| (vi) | ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು. | |

**27. ಹಣಕಾಸು ಸಮಿತಿ.**– (1) ಹಣಕಾಸು ಸಮಿತಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

| | | |
|---|---|---|
| (i) | ಕುಲಾಧಿಪತಿಯವರು ಅಥವಾ ಅವರ ನಾಮನಿರ್ದೇಶಿತರು | – ಅಧ್ಯಕ್ಷರು |
| (ii) | ಕುಲಪತಿಯವರು | – ಸದಸ್ಯರು |
| (iii) | ಕುಲಸಚಿವರು | – ಸದಸ್ಯರು |
| (iv) | ಹಣಕಾಸು ಅಧಿಕಾರಿ | – ಕಾರ್ಯದರ್ಶಿ |
| (v) | ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು | – ಸದಸ್ಯರು; ಮತ್ತು |
| (iv) | ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು. | |

(2) ಹಣಕಾಸು ಸಮಿತಿಯು ಹಣಕಾಸಿನ ವಿಷಯಗಳನ್ನು ಕೈಗೊಳ್ಳುವ ವಿಶ್ವವಿದ್ಯಾಲಯದ ಪ್ರಧಾನ ಹಣಕಾಸು ಸಂಸ್ಥೆಯಾಗಿರತಕ್ಕದ್ದು ಹಾಗೂ ಅದು ಈ ಅಧಿನಿಯಮ, ನಿಯಮಗಳು ಮತ್ತು ಪರಿನಿಯಮಗಳ ಉಪಬಂಧಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಹಣಕಾಸು ವಿಷಯಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**28. ಇತರ ಪ್ರಾಧಿಕಾರಗಳು.**– ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ರಚನೆ, ಅಧಿಕಾರಗಳು ಹಾಗೂ ಪ್ರಕಾರ್ಯಗಳು ಪರಿನಿಯಮಗಳಿಂದ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

**29. ಒಂದು ಪ್ರಾಧಿಕಾರದ ಅಥವಾ ಸಂಸ್ಥೆಯ ಸದಸ್ಯತ್ವಕ್ಕೆ ಅನರ್ಹತೆ.**– ವಿಶ್ವವಿದ್ಯಾಲಯದ ಸಂಸ್ಥೆಗಳ ಯಾವುವೇ ಪ್ರಾಧಿಕಾರಗಳ ಒಬ್ಬ ವ್ಯಕ್ತಿಯು,-

(ಎ) ಅಸ್ವಸ್ಥ ಚಿತ್ತನಾಗಿದ್ದು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿಸಲ್ಪಟ್ಟಿದ್ದರೆ;

(ಬಿ) ಅವಿಮುಕ್ತ ದಿವಾಳಿಯಾಗಿದ್ದರೆ;

(ಸಿ) ನೈತಿಕ ಅಧ:ಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದರೆ;

(ಡಿ) ಖಾಸಗಿ ಬೋಧನಾ ತರಗತಿಗಳನ್ನು ನಡೆಸುತ್ತಿದ್ದರೆ ಅಥವಾ ಸ್ವತ: ನಿರತನಾಗಿದ್ದರೆ;

(ಇ) ಯಾವುದೇ ವಿಧದಲ್ಲಿ, ಎಲ್ಲಿಯೇ, ಯಾವುದೇ ಪರೀಕ್ಷೆಯನ್ನು ನಡೆಸುವಲ್ಲಿ ಅನುಚಿತ ಅಭ್ಯಾಸದಲ್ಲಿ ತೊಡಗಿದ್ದಕ್ಕಾಗಿ ಅಥವಾ ಉತ್ತೇಜಿಸಿದ್ದಕ್ಕಾಗಿ ದಂಡಿತನಾಗಿದ್ದರೆ;

(ಎಫ್) ಪ್ರಾಯೋಜಿತ ಸಂಸ್ಥೆಯು ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಯಾವೊಬ್ಬ ಸದಸ್ಯನನ್ನು ಆ ಪದವನ್ನು ಹೊಂದಿರುವುದಕ್ಕೆ ಅರ್ಹನಲ್ಲನೆಂದು ಲಿಖಿತದಲ್ಲಿ ಅಭಿಪ್ರಾಯ ನೀಡಿದಾಗಲೆಲ್ಲಾ,

-ಸದಸ್ಯನಾಗಿರುವುದಕ್ಕೆ ಅನರ್ಹನಾಗತಕ್ಕದ್ದು.

**30. ಖಾಲಿಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ.**– ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಕಾರ್ಯ ಅಥವಾ ವ್ಯವಹರಣೆಗಳು ಕೇವಲ ಅದರಲ್ಲಿ ಯಾವುದೇ ಖಾಲಿಸ್ಥಾನ ಇದೆ ಎಂಬ ಕಾರಣದಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣದಿಂದ ಮಾತ್ರವೇ ಅಸಿಂಧುವಾಗತಕ್ಕದ್ದಲ್ಲ.

**31. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು.–** (1) ಯಾವುವೇ ಕಾರ್ಯಸೂಚಿ ವಿಷಯಗಳನ್ನು ಕುಲಾಧಿಪತಿಯವರ ಪೂರ್ವಾನುಮೋದನೆಯನ್ನು ಪಡೆಯದೇ ಪ್ರಬಂಧಕ ಮಂಡಳಿಯ ಅಥವಾ ವ್ಯವಸ್ಥಾಪನಾ ಮಂಡಳಿಯ ಅಥವಾ ಯಾವುದೇ ಸಮಿತಿಯ ಸಭೆಗಳ ಕಾರ್ಯಸೂಚಿ ವಿಷಯಗಳಲ್ಲಿ ಸೇರಿಸತಕ್ಕದ್ದಲ್ಲ ಅಥವಾ ಚರ್ಚೆಗೆ ತೆಗೆದುಕೊಳ್ಳತಕ್ಕದ್ದಲ್ಲ ಮತ್ತು ತೀರ್ಮಾನಿಸತಕ್ಕದ್ದಲ್ಲ.

(2) ಈ ಅಧಿನಿಯಮದ ಯಾವುದೇ ಉಪಬಂಧಗಳನ್ನು ಪಾಲಿಸದೆ ಇರುವ ಸಂದರ್ಭದಲ್ಲಿ, ಕುಲಾಧಿಪತಿಯವರು ವಿಶ್ವವಿದ್ಯಾಲಯದ ಯಾವುದೇ ಪದಾಧಿಕಾರಿ ಅಥವಾ ಸಂಸ್ಥೆಯು ತೆಗೆದುಕೊಂಡ ಎಲ್ಲಾ ತೀರ್ಮಾನಗಳನ್ನು ವಿಪರ್ಯಾಯಗೊಳಿಸುವ ಮೂಲಕ ಪರಿಹಾರ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಅಧಿಕಾರವನ್ನು ಎಲ್ಲಾ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಅಂಥ ಪರಿಹಾರ ಕ್ರಮದ ಪರಿಣಾಮವಾಗಿ ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ವಿಶ್ವವಿದ್ಯಾಲಯದ ಪದಾಧಿಕಾರಿ ಅಥವಾ ಸಂಸ್ಥೆಯು ಕೈಗೊಂಡಿದ್ದ ಎಲ್ಲಾ ಅಂಥ ಕ್ರಮಗಳು, ಮೊದಲಿನಿಂದಲೂ ಶೂನ್ಯ ಮತ್ತು ಅಕೃತ ಎಂದು ಭಾವಿಸತಕ್ಕದ್ದು ಹಾಗೂ ತತ್ಪರಿಣಾಮವಾಗಿ, ಉಪಬಂಧ ಪಾಲಿಸದೇ ಇದ್ದ ವಿಷಯ ಅಥವಾ ನಿರ್ಧಾರದ ಸಂಬಂಧದಲ್ಲಿ ಅದಕ್ಕೆ ಮುಂಚೆ ಇದ್ದ ವಸ್ತುಸ್ಥಿತಿಯೇ ಮುಂದುವರಿಯತಕ್ಕದ್ದು.

## ಅಧ್ಯಾಯ – V

## ಪರಿನಿಯಮಗಳು ಮತ್ತು ವಿನಿಯಮಗಳು

**32. ಪರಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಪರಿನಿಯಮಗಳು ವಿಶ್ವವಿದ್ಯಾಲಯಕ್ಕೆ ಮತ್ತು ಸಿಬ್ಬಂದಿಗೆ ಸಂಬಂಧಿಸಿದ ಎಲ್ಲಾ ಅಥವಾ ಯಾವುದೇ ವಿಷಯಕ್ಕೆ ಈ ಕೆಳಗಿನಂತೆ ಉಪಬಂಧ ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಕಾರ್ಯಕಲಾಪಗಳನ್ನು ನಡೆಸುವ ಮತ್ತು ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸದಿರುವ ಸಂಸ್ಥೆಗಳ ರಚನೆಯ ಕಾರ್ಯವಿಧಾನ;

(ii) ಶಾಶ್ವತ ಶಾಸನಬದ್ಧ ದತ್ತಿ ನಿಧಿ, ವಿಶ್ವವಿದ್ಯಾಲಯ ದತ್ತಿ ನಿಧಿ, ಸಾಮಾನ್ಯ ನಿಧಿ ಹಾಗೂ ಅಭಿವೃದ್ಧಿ ನಿಧಿಗಳ ನಿರ್ವಹಣೆ;

(iii) ಕುಲಪತಿಗಳು, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರ ನೇಮಕಾತಿಯ ನಿಬಂಧನೆಗಳು ಹಾಗೂ ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಪ್ರಕಾರ್ಯಗಳು;

(iv) ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ, ಅಧ್ಯಾಪಕರ ಮತ್ತು ನೌಕರರ ನೇಮಕಾತಿ ವಿಧಾನ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(v) ವಿಶ್ವವಿದ್ಯಾಲಯ ಹಾಗೂ ಅದರ ಅಧಿಕಾರಿಗಳು, ವ್ಯಾಸಂಗ ವಿಭಾಗದ (ಫ್ಯಾಕಲ್ಟಿ) ಸದಸ್ಯರು, ನೌಕರರು ಹಾಗೂ ವಿದ್ಯಾರ್ಥಿಗಳ ನಡುವೆ ಉಂಟಾದ ವಿವಾದಗಳನ್ನು ಪರಿಹರಿಸುವ ಕಾರ್ಯವಿಧಾನ;

(vi) ವಿಭಾಗಗಳು ಮತ್ತು ವ್ಯಾಸಂಗ ವಿಭಾಗಗಳ (ಫ್ಯಾಕಲ್ಟಿಗಳ) ಸೃಜನೆ, ರದ್ಧತಿ ಅಥವಾ ಪುನಾರಚನೆ;

(vii) ಇತರ ವಿಶ್ವವಿದ್ಯಾಲಯಗಳು ಅಥವಾ ಉನ್ನತ ಕಲಿಕಾ ಸಂಸ್ಥೆಗಳ ಜೊತೆಯಲ್ಲಿ ಸಹಕರಿಸಬೇಕಾದ ರೀತಿ;

(viii) ಗೌರವ ಪದವಿಗಳ ನೀಡಿಕೆಯ ಕಾರ್ಯವಿಧಾನ;

(ix) ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿವೇತನ ಮಂಜೂರಾತಿಗೆ ಸಂಬಂಧಿಸಿದ ಉಪಬಂಧಗಳು;

(x) ವಿವಿಧ ವ್ಯಾಸಂಗ ಕ್ರಮಗಳಲ್ಲಿನ ಸೀಟುಗಳ ಸಂಖ್ಯೆಗೆ ಸಂಬಂಧಿಸಿದ ಕಾರ್ಯನೀತಿಗಳು ಮತ್ತು ಅಂಥ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಕಾರ್ಯವಿಧಾನ;

(xi) ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಶುಲ್ಕಕ್ಕೆ ಸಂಬಂಧಿಸಿದ ಕಾರ್ಯನೀತಿ;

(xii) ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಉಚಿತ ಶಿಕ್ಷಣ, ಪದಕಗಳು ಹಾಗೂ ಬಹುಮಾನಗಳನ್ನು ಪ್ರಾರಂಭಿಸುವುದು;

(xiii) ಪ್ರಬಂಧಕ ಮಂಡಳಿಯು ನಿರ್ಧರಿಸಬಹುದಾದ ಅಥವಾ ಈ ಅಧಿನಿಯಮದ ಅಡಿಯಲ್ಲಿ ಪರಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬೇಕಾದ ಅಗತ್ಯತೆಯುಳ್ಳ ಯಾವುದೇ ಇತರ ವಿಷಯಗಳು.

**33. ಪರಿನಿಯಮಗಳ ರಚನೆ ವಿಧಾನ.–** (1) ವ್ಯವಸ್ಥಾಪನಾ ಮಂಡಳಿಯು ರಚಿಸಿದ ಮೊದಲ ಶಾಸನಗಳನ್ನು ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ವ್ಯವಸ್ಥಾಪನಾ ಮಂಡಳಿಯು ಸಲ್ಲಿಸಿದ ಮೊದಲ ಪರಿನಿಯಮಗಳನ್ನು ಪ್ರಬಂಧಕ ಮಂಡಳಿಯು ಪರಿಗಣಿಸತಕ್ಕದ್ದು ಹಾಗೂ ತಾನು ಅವಶ್ಯವೆಂದು ಭಾವಿಸಬಹುದಾದ ಅಂಥ ಮಾರ್ಪಾಡುಗಳು, ಯಾವುದಾದರು ಇದ್ದಲ್ಲಿ, ಅವುಗಳೊಡನೆ ತನ್ನ ಅನುಮೋದನೆಯನ್ನು ನೀಡತಕ್ಕದ್ದು.

(3) ವಿಶ್ವವಿದ್ಯಾಲಯವು, ಪ್ರಬಂಧಕ ಮಂಡಳಿಯು ಅನುಮೋದಿಸಿದ ಮೊದಲ ಪರಿನಿಯಮಗಳನ್ನು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ಪ್ರಕಟಿಸತಕ್ಕದ್ದು ಮತ್ತು ತದನಂತರ ಮೊದಲ ಪರಿನಿಯಮಗಳ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

34. **ಪರಿನಿಯಮಗಳ ತಿದ್ದುಪಡಿಯ ಅಧಿಕಾರ.**– ಪ್ರಬಂಧಕ ಮಂಡಳಿಯು ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸಬಹುದು ಅಥವಾ ಪರಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ಅವನ್ನು ನಿರಸನಗೊಳಿಸಬಹುದು.

35. **ವಿನಿಯಮಗಳು.**– ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ವಿನಿಯಮಗಳು ಈ ಮುಂದಿನ ವಿಷಯಗಳಿಗೆ ಉಪಬಂಧಗಳನ್ನು ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ವಿದ್ಯಾರ್ಥಿ ಪಟ್ಟಿಯಲ್ಲಿ ಅವರುಗಳ ದಾಖಲಾತಿ ಹಾಗೂ ಮುಂದುವರಿಕೆ;

(ii) ವಿಶ್ವವಿದ್ಯಾಲಯದ ಎಲ್ಲಾ ಪದವಿಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ನಿಗದಿಪಡಿಸತಕ್ಕ ವ್ಯಾಸಂಗ ಕ್ರಮಗಳು;

(iii) ಪದವಿಗಳ ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರದಾನ;

(iv) ಸಂಶೋಧನಾ ವೇತನಗಳು (ಫೆಲೋಶಿಪ್), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಪದಕಗಳು ಮತ್ತು ಬಹುಮಾನಗಳನ್ನು ನೀಡಲು ಷರತ್ತುಗಳು;

(v) ಪರೀಕ್ಷೆಗಳನ್ನು ನಡೆಸುವುದು ಹಾಗೂ ಪರೀಕ್ಷೆ ನಡೆಸುವ ಸಂಸ್ಥೆಗಳು, ಪರೀಕ್ಷಕರು, ಪರೀಕ್ಷಾ ಮೇಲ್ವಿಚಾರಕರು, ಟ್ಯಾಬುಲೇಟರ್‌ಗಳು ಮತ್ತು ಮಾಡರೇಟರ್‌ಗಳ ನೇಮಕಾತಿ ಷರತ್ತುಗಳು ಮತ್ತು ವಿಧಾನ ಹಾಗೂ ಅವರ ಕರ್ತವ್ಯಗಳು;

(vi) ವಿಶ್ವವಿದ್ಯಾಲಯದ ಪರೀಕ್ಷೆಗಳಿಗೆ, ಪದವಿಗಳಿಗೆ ಹಾಗೂ ಇತರ ಶೈಕ್ಷಣಿಕ ಪ್ರಶಸ್ತಿಗಳಿಗೆ ಪ್ರವೇಶಕ್ಕೆ ವಿಧಿಸತಕ್ಕ ಶುಲ್ಕ;

(vii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನಲ್ಲಿ ವಿದ್ಯಾರ್ಥಿಗಳ ನಿವಾಸಕ್ಕಾಗಿ ಷರತ್ತುಗಳು;

(viii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಶಿಸ್ತು ಪಾಲನೆ;

(ix) ಈ ಅಧಿನಿಯಮದ ಅಡಿಯಲ್ಲಿನ ಪರಿನಿಯಮಗಳಲ್ಲಿ ಉಪಬಂಧ ಕಲ್ಪಿಸಬಹುದಾಂಥ ಇತರ ಎಲ್ಲಾ ವಿಷಯಗಳು.

36. **ವಿನಿಯಮಗಳ ರಚನೆ ವಿಧಾನ.**– ವಿನಿಯಮಗಳನ್ನು ಶೈಕ್ಷಣಿಕ ಪರಿಷತ್ತು ರಚಿಸತಕ್ಕದ್ದು ಹಾಗೂ ವ್ಯವಸ್ಥಾಪನಾ ಮಂಡಳಿಯು ಅನುಮೋದಿಸತಕ್ಕದ್ದು.

37. **ವಿನಿಯಮಗಳ ತಿದ್ದುಪಡಿಗೆ ಅಧಿಕಾರ.**– ವ್ಯವಸ್ಥಾಪನಾ ಮಂಡಳಿಯ ಅನುಮೋದನೆಯೊಡನೆ ಶೈಕ್ಷಣಿಕ ಪರಿಷತ್ತು ಹೊಸ ವಿನಿಯಮಗಳನ್ನು ಅಥವಾ ಹೆಚ್ಚುವರಿ ವಿನಿಯಮಗಳನ್ನು ರಚಿಸಬಹುದು ಅಥವಾ ವಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ನಿರಸನಗೊಳಿಸಬಹುದು.

38. **ಶುಲ್ಕ ನಿಯಂತ್ರಣ ಸಮಿತಿ.**– (1) ಸರ್ಕಾರವು ರಚಿಸಿದ ನಿವೃತ್ತ ಸರ್ವೋಚ್ಚ ನ್ಯಾಯಾಲಯದ ಅಥವಾ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು ಮುಖ್ಯಸ್ಥರಾಗಿರುವ ಮತ್ತು ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ, ಉನ್ನತ ಶಿಕ್ಷಣ ಪ್ರಭಾರದಲ್ಲಿರುವ ಸರ್ಕಾರದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು, ವೈದ್ಯಕೀಯ ಶಿಕ್ಷಣದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು, ಒಬ್ಬ ಮಹಿಳೆಯೂ ಸೇರಿದಂತೆ ಪ್ರಬಂಧಕ ಮಂಡಳಿಯು ನಾಮನಿರ್ದೇಶಿಸಿದ ಇಬ್ಬರು ಶಿಕ್ಷಣ ತಜ್ಞರು ಇವರುಗಳನ್ನು ಒಳಗೊಂಡ ಒಂದು ಶುಲ್ಕ ನಿಯಂತ್ರಣ ಸಮಿತಿಯು, 9ನೇ ಪ್ರಕರಣದ ಅಡಿಯಲ್ಲಿ ಕರ್ನಾಟಕದ ವಿದ್ಯಾರ್ಥಿಗಳಿಗಾಗಿ ಮೀಸಲಿರಿಸಿದ ವಿಶ್ವವಿದ್ಯಾಲಯದ

ಸ್ಥಾನಗಳ ಶುಲ್ಕವನ್ನು ನಿಯಂತ್ರಿಸತಕ್ಕದ್ದು. ಸಮಿತಿಯಲ್ಲಿ ಈ ಉದ್ದೇಶಕ್ಕಾಗಿ ಒಬ್ಬರು ಖ್ಯಾತ ಚಾರ್ಟರ್ಡ್ ಅಕೌಂಟೆಂಟ್ ರವರನ್ನು ಸಹ ಸದಸ್ಯನನ್ನಾಗಿ ಸೇರಿಸಿಕೊಳ್ಳತಕ್ಕದ್ದು.

(2) ಸಮಿತಿಯು ವಿಶ್ವವಿದ್ಯಾಲಯದ ಪ್ರವೇಶಗಳ ಮತ್ತು ಶುಲ್ಕದ ಸಂಗ್ರಹಣೆಯ ಅನುಪಾಲನೆಯನ್ನು ನೋಡಿಕೊಳ್ಳತಕ್ಕದ್ದು.

## ಅಧ್ಯಾಯ - VI

## ಸಂಕೀರ್ಣ

**39. ನೌಕರರ ಸೇವಾ ಷರತ್ತುಗಳು.–** (1) ಪರಿನಿಯಮಗಳ ಮತ್ತು ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಥವಾ ನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳು, ಯಾವುದಾದರೂ ಇದ್ದಲ್ಲಿ, ಅವುಗಳಿಗೆ ಒಳಪಟ್ಟು ಪ್ರತಿಯೊಬ್ಬ ನೌಕರನು ಲಿಖಿತ ಕರಾರಿನ ಅಡಿಯಲ್ಲಿ ನೇಮಕಗೊಳ್ಳತಕ್ಕದ್ದು ಮತ್ತು ಅದನ್ನು ವಿಶ್ವವಿದ್ಯಾಲಯದಲ್ಲಿ ಇಟ್ಟುಕೊಳ್ಳತಕ್ಕದ್ದು ಹಾಗೂ ಅದರ ಪ್ರತಿಯನ್ನು ಸಂಬಂಧಪಟ್ಟ ನೌಕರನಿಗೆ ನೀಡತಕ್ಕದ್ದು.

(2) ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಕಾರ್ಯವಿಧಾನಗಳ ಮೂಲಕ ನಿಯಂತ್ರಿಸತಕ್ಕದ್ದು.

(3) ಕರಾರಿನಿಂದಾಗಿ ವಿಶ್ವವಿದ್ಯಾಲಯ ಮತ್ತು ನೌಕರನ ಮಧ್ಯದಲ್ಲಿ ಉದ್ಭವಿಸಬಹುದಾದ ಯಾವುದೇ ವಿವಾದವನ್ನು, ಲಿಖಿತ ಕರಾರಿನಲ್ಲಿ ಉಪಬಂಧಿಸಿದ ವಿಧಾನದಲ್ಲಿ ಹಾಗೂ ಪರಿನಿಯಮಗಳ ಅನುಸಾರವಾಗಿ ಪರಿಹರಿಸತಕ್ಕದ್ದು.

**40. ಮೇಲ್ಮನವಿ ಹಕ್ಕು.–** ವಿಶ್ವವಿದ್ಯಾಲಯವು ತನ್ನ ನೌಕರರ ಅಥವಾ ವಿದ್ಯಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡ ಸಂದರ್ಭದಲ್ಲಿ, ಬಾಧಿತ ನೌಕರ ಅಥವಾ ವಿದ್ಯಾರ್ಥಿಗಳು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಮೇಲ್ಮನವಿ ಹಕ್ಕನ್ನು ಹೊಂದಿರತಕ್ಕದ್ದು.

**41. ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿ .–** ವಿಶ್ವವಿದ್ಯಾಲಯವು, ತನ್ನ ನೌಕರರ ಪ್ರಯೋಜನಕ್ಕಾಗಿ, ಪರಿನಿಯಮಗಳು ಮತ್ತು ಜಾರಿಯಲ್ಲಿರುವ ಕಾನೂನುಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿಯನ್ನು ರಚಿಸತಕ್ಕದ್ದು ಹಾಗೂ ಅಂಥ ವಿಮಾ ಯೋಜನೆಗಳನ್ನು ಒದಗಿಸತಕ್ಕದ್ದು.

**42. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಇತರ ಸಂಸ್ಥೆಯ ಸದಸ್ಯನಾಗಿ ಯಾವೊಬ್ಬ ವ್ಯಕ್ತಿಯು ಸೂಕ್ತವಾಗಿ ಆಯ್ಕೆಯಾಗಿದ್ದಾನೆಯೇ ಅಥವಾ ನೇಮಕಗೊಂಡಿದ್ದಾನೆಯೇ ಅಥವಾ ಅದಕ್ಕೆ ಅರ್ಹನಾಗಿದ್ದಾನೆಯೇ ಎಂಬ ಯಾವುದೇ ಪ್ರಶ್ನೆ ಉದ್ಭವಿಸಿದರೆ, ಆ ವಿಷಯವನ್ನು ತೀರ್ಮಾನಕ್ಕಾಗಿ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**43. ಸಮಿತಿಗಳ ರಚನೆ.–** 22ನೇ ಪ್ರಕರಣದಲ್ಲಿ ನಮೂದಿಸಿದ ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಅಧಿಕಾರವನ್ನು ಹೊಂದಿರುವ ಅಂಥ ಸದಸ್ಯರನ್ನು ಒಳಗೊಂಡ ಅಂಥ ಪ್ರಾಧಿಕಾರದ ಒಂದು ಸಮಿತಿಯನ್ನು ರಚಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**44. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಂಸ್ಥೆಯ ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ಪೈಕಿ ಯಾವುದೇ ಸ್ಥಾನವು ಆಕಸ್ಮಿಕವಾಗಿ ಖಾಲಿಯಾದರೆ, ಯಾರ ಸ್ಥಾನವು ಖಾಲಿಯಾಗಿ ತುಂಬಬೇಕಾಗಿ ಬಂದಿದೆಯೋ ಆ ಸದಸ್ಯನನ್ನು ಯಾವ ರೀತಿಯಲ್ಲಿ ಆರಿಸಲಾಗಿತ್ತೋ ಅದೇ ರೀತಿಯಲ್ಲಿ ಹೊಸ ಸದಸ್ಯನನ್ನು ಆರಿಸಿ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ಖಾಲಿ ಸ್ಥಾನವನ್ನು ಭರ್ತಿ ಮಾಡಿದ ವ್ಯಕ್ತಿಯು ಆತನು ಯಾವ ಸದಸ್ಯನ ಸ್ಥಾನದಲ್ಲಿ ಭರ್ತಿಯಾಗಿರುವನೋ ಆ ಸದಸ್ಯನು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯನಾಗಿ ಉಳಿಯುತ್ತಿದ್ದ ಬಾಕಿ ಅವಧಿಯವರೆಗೆ ಮಾತ್ರ ಸದಸ್ಯನಾಗಿರತಕ್ಕದ್ದು.

**45. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.–** ಈ ಅಧಿನಿಯಮ ಅಥವಾ ಪರಿನಿಯಮಗಳು ಅಥವಾ ನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ವಿಶ್ವವಿದ್ಯಾಲಯದ ಯಾವೊಬ್ಬ ಅಧಿಕಾರಿ ಅಥವಾ ಇತರ ನೌಕರರ ವಿರುದ್ಧ ಯಾವುದೇ ದಾವೆ ಅಥವಾ ಇತರ ಕಾನೂನು ವ್ಯವಹರಣೆಗಳನ್ನು ನಡೆಸಲು ಅವಕಾಶ ಇರತಕ್ಕದ್ದಲ್ಲ.

**46. ತಾತ್ಕಾಲಿಕ ಉಪಬಂಧಗಳು.–** ಈ ಅಧಿನಿಯಮ ಮತ್ತು ಪರಿನಿಯಮಗಳ ಯಾವುದೇ ಇತರ ಉಪಬಂಧಗಳಲ್ಲಿ ಏನೇ ಇದ್ದರೂ,–

(i) ಮೊದಲ ಕುಲಪತಿ ಮತ್ತು ಸಹಕುಲಪತಿ, ಯಾರಾದರೂ ಇದ್ದರೆ, ಅವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(ii) ಮೊದಲ ಕುಲಸಚಿವರನ್ನು ಮತ್ತು ಮೊದಲ ಹಣಕಾಸು ಅಧಿಕಾರಿಯವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು; ಮತ್ತು

(iii) ಮೊದಲ ವ್ಯವಸ್ಥಾಪನ ಮಂಡಳಿ, ಮೊದಲ ಹಣಕಾಸು ಸಮಿತಿ, ಮೊದಲ ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಹಾಗೂ ಮೊದಲ ಶೈಕ್ಷಣಿಕ ಪರಿಷತ್ತನ್ನು ಕುಲಾಧಿಪತಿಯವರು ರಚಿಸತಕ್ಕದ್ದು.

**47. ಶಾಶ್ವತ ಶಾಸನಬದ್ಧ ದತ್ತಿ ನಿಧಿ.–** ((1) ವಿಶ್ವವಿದ್ಯಾಲಯವು, ಕನಿಷ್ಠ ಇಪ್ಪತ್ತೈದು ಕೋಟಿ ರೂಪಾಯಿಗಳನ್ನುಳ್ಳ ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು ಇದರ ಪೈಕಿ ಕನಿಷ್ಠ ಹದಿನೈದು ಕೋಟಿ ರೂಪಾಯಿಗಳು ನಗದು ರೂಪದಲ್ಲಿ ಮತ್ತು ಇನ್ನುಳಿದದ್ದು ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ಇರತಕ್ಕದ್ದು ಮತ್ತು ಇದನ್ನು ತಾನಾಗಿಯೆ ಹೆಚ್ಚಿಸಬಹುದಾಗಿದ್ದು ಆದರೆ ಕಡಿಮೆ ಮಾಡತಕ್ಕದ್ದಲ್ಲ.

ಪರಂತು, ಬೆಂಗಳೂರು ಅಥವಾ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊರಗಿರುವ ವಿಶ್ವವಿದ್ಯಾಲಯದ ಸಂದರ್ಭದಲ್ಲಿ ಕನಿಷ್ಠ ಹತ್ತು ಕೋಟಿ ರೂಪಾಯಿಗಳು ನಗದು ರೂಪದಲ್ಲಿರತಕ್ಕದ್ದು ಮತ್ತು ಉಳಿದ ಐದು ಕೋಟಿ ರೂಪಾಯಿಗಳು ಬ್ಯಾಂಕ್ ಗ್ಯಾರಂಟಿಯ ರೂಪದಲ್ಲಿರತಕ್ಕದ್ದು.

(2) ವಿಶ್ವವಿದ್ಯಾಲಯವು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಹಣವನ್ನು ಹೂಡಲು ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯವು ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಗೆ ವರ್ಗಾವಣೆ ಮಾಡಬಹುದು. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನೂ ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(4) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಿದ ವರಮಾನದ ಶೇಕಡಾ ಎಪ್ಪತ್ತೈದರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತೈದರಷ್ಟನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಯಲ್ಲಿ ಪುನ: ತೊಡಗಿಸತಕ್ಕದ್ದು.

**48. ವಿಶ್ವವಿದ್ಯಾಲಯದ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ನಿಧಿಗಳನ್ನು ಒಳಗೊಂಡ ವಿಶ್ವವಿದ್ಯಾಲಯದ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದು ಕಾಲಕಾಲಕ್ಕೆ ಸ್ವೀಕರಿಸಬಹುದಾದ ದೇಣಿಗೆಗಳು ಮತ್ತು ಇತರ ನಿಧಿಗಳನ್ನು ಒಳಗೊಂಡಿರತಕ್ಕದ್ದು.

(2) ವಿಶ್ವವಿದ್ಯಾಲಯವು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ವಿಶ್ವವಿದ್ಯಾಲಯದ ದತ್ತಿನಿಧಿಯನ್ನು ಹೂಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯ ದತ್ತಿ ನಿಧಿಯು, ವಿಶ್ವವಿದ್ಯಾಲಯವು ತನ್ನ ಸಾಮಾಜಿಕ ಧ್ಯೇಯೋದ್ದೇಶಗಳನ್ನು ನೆರವೇರಿಸುವ ಸಂದರ್ಭದಲ್ಲಿ ಮತ್ತು/ಅಥವಾ ಮುಂಗಾಣದ ಸನ್ನಿವೇಶದಲ್ಲಿ ಉದ್ಭವಿಸಬಹುದಾದ ಹಣಕಾಸು ಸವಾಲುಗಳಿಂದ ತನ್ನನ್ನು ರಕ್ಷಿಸಿಕೊಳ್ಳುವುದಕ್ಕಾಗಿ, ಸ್ವಇಚ್ಛೆಯಿಂದ ನಿರ್ವಹಿಸಿಕೊಂಡು ಬರಲು ಮತ್ತು ಜವಾಬ್ದಾರಿಯಿಂದ ಹಣ ಹೂಡಿಕೆ ಮಾಡಲು ಇಚ್ಛೆಯುಳ್ಳವರಾಗಿ ಸ್ವಯಂ ವಿಧಿಸಿಕೊಂಡ ನಿಧಿಯಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಗೆ ವರ್ಗಾಯಿಸಬಹುದು. ವಿಶ್ವವಿದ್ಯಾಲಯದ ಸಮಾಪಣೆಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನು ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(5) ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಬರುವ ವರಮಾನದ ಶೇಕಡಾ ಎಂಭತ್ತರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸದ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತರಷ್ಟನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**49. ಸಾಮಾನ್ಯ ನಿಧಿ.**– (1) ವಿಶ್ವವಿದ್ಯಾಲಯವು, ಒಂದು ಸಾಮಾನ್ಯ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯವು ವಿಧಿಸಬಹುದಾದ ಎಲ್ಲಾ ಶುಲ್ಕಗಳು;

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವುದೇ ಇತರ ಮೂಲದಿಂದ ಸ್ವೀಕರಿಸಲಾದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ದೇಣಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು;

(2) ಸಾಮಾನ್ಯ ನಿಧಿಗೆ ಜಮಾ ಮಾಡುವ ನಿಧಿಗಳನ್ನು ವಿಶ್ವವಿದ್ಯಾಲಯದ ಎಲ್ಲಾ ಆವರ್ತಕ ವೆಚ್ಚಗಳನ್ನು ಭರಿಸಲು ಉಪಯೋಗಿಸಿಕೊಳ್ಳತಕ್ಕದ್ದು.

**50. ಅಭಿವೃದ್ಧಿ ನಿಧಿ.**– (1) ವಿಶ್ವವಿದ್ಯಾಲಯವು, ಒಂದು ಅಭಿವೃದ್ಧಿ ನಿಧಿಯನ್ನು ಸಹ ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ವಿದ್ಯಾರ್ಥಿಗಳಿಂದ ವಿಧಿಸಬಹುದಾದ ಅಭಿವೃದ್ಧಿ ಶುಲ್ಕಗಳು;

(ii) ವಿಶ್ವವಿದ್ಯಾಲಯದ ಅಭಿವೃದ್ಧಿಯ ಉದ್ದೇಶಗಳಿಗಾಗಿ ಯಾವುದೇ ಇತರ ಮೂಲಗಳಿಂದ ಸ್ವೀಕರಿಸಿದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ವಂತಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು; ಮತ್ತು

(v) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಲಾದ ಎಲ್ಲಾ ವರಮಾನಗಳು.

(2) ಅಭಿವೃದ್ಧಿ ನಿಧಿಗೆ ಕಾಲಕಾಲಕ್ಕೆ ಜಮಾ ಮಾಡಿದ ನಿಧಿಯನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಉಪಯೋಗಿಸಿಕೊಳ್ಳತಕ್ಕದ್ದು.

**51. ನಿಧಿಗಳ ನಿರ್ವಹಣೆ.**– 47, 48, 49 ಮತ್ತು 50ನೇ ಪ್ರಕರಣಗಳಡಿಯಲ್ಲಿ ಸ್ಥಾಪಿಸಲಾದ ನಿಧಿಗಳನ್ನು ಪ್ರಬಂಧಕ ಮಂಡಳಿಯ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ನಿಯಂತ್ರಿಸತಕ್ಕದ್ದು ಹಾಗೂ ನಿರ್ವಹಿಸತಕ್ಕದ್ದು.

**52. ವಾರ್ಷಿಕ ವರದಿ.**– (1) ವಿಶ್ವವಿದ್ಯಾಲಯದ ವಾರ್ಷಿಕ ವರದಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ಅದರ ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಪ್ರಬಂಧಕ ಮಂಡಳಿಯು ವಾರ್ಷಿಕ ವರದಿಯನ್ನು ತನ್ನ ಸಭೆಯಲ್ಲಿ ಪರಿಗಣಿಸತಕ್ಕದ್ದು ಹಾಗೂ ಅದನ್ನು ಮಾರ್ಪಾಡುಗಳೊಡನೆ ಅಥವಾ ಮಾರ್ಪಾಡುಗಳಿಲ್ಲದೆ ಅನುಮೋದಿಸಬಹುದು.

(3) ಪ್ರಬಂಧಕ ಮಂಡಳಿಯು ಸೂಕ್ತವಾಗಿ ಅನುಮೋದಿಸಿದ ವಾರ್ಷಿಕ ವರದಿಯ ಒಂದು ಪ್ರತಿಯನ್ನು ಪ್ರತಿವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ಡಿಸೆಂಬರ್ 31ಕ್ಕೆ ಮೊದಲು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**53. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.**– (1) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕ ಪತ್ರ ಮತ್ತು ಜಮಾ ಖರ್ಚು ಪಟ್ಟಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯಕ್ಕೆ ಎಲ್ಲಾ ಮೂಲಗಳಿಂದ ಪ್ರಾಪ್ತವಾಗುವ ಅಥವಾ ಸ್ವೀಕರಿಸಲಾಗುವ ಎಲ್ಲಾ ನಿಧಿಗಳು ಹಾಗೂ ವಿತರಿಸಿದ ಅಥವಾ ಸಂದಾಯ ಮಾಡಿದ ಎಲ್ಲಾ ಮೊಬಲಗುಗಳನ್ನು ವಿಶ್ವವಿದ್ಯಾಲಯವು ನಿರ್ವಹಿಸುವ ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕಪತ್ರಗಳನ್ನು ಪ್ರತಿ ವರ್ಷವೂ ಭಾರತದ ಚಾರ್ಟೆಡ್ ಅಕೌಂಟೆಂಟ್‌ಗಳ ಸಂಸ್ಥೆಯ ಸದಸ್ಯರಾಗಿರುವ ಒಬ್ಬ ಲೆಕ್ಕಪರಿಶೋಧಕರಿಂದ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಲೆಕ್ಕಪರಿಶೋಧನಾ ವರದಿಯೊಡನೆ, ಪ್ರತಿ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ನವೆಂಬರ್ 30ಕ್ಕೆ ಮೊದಲು ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(4) ವಾರ್ಷಿಕ ಲೆಕ್ಕಪತ್ರಗಳು, ಜಮಾಖರ್ಚು ಪಟ್ಟಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಪ್ರಬಂಧಕ ಮಂಡಳಿಯು ತನ್ನ ಸಭೆಯಲ್ಲಿ ಪರ್ಯಾಲೋಚಿಸತಕ್ಕದ್ದು ಮತ್ತು ಪ್ರಬಂಧಕ ಮಂಡಳಿಯು ಅದನ್ನು ತನ್ನ ಅಭಿಪ್ರಾಯಗಳೊಡನೆ ಸಂದರ್ಶಕರಿಗೆ ಹಾಗೂ ಸರ್ಕಾರಕ್ಕೆ ಪ್ರತಿ ವರ್ಷದ ಡಿಸೆಂಬರ್ 31ಕ್ಕೆ ಮೊದಲು ಕಳುಹಿಸತಕ್ಕದ್ದು.

**54. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಮಿತಿಯ ಯಾವುದೇ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ ಅಥವಾ ಗೊತ್ತುವಳಿಯು ಅಥವಾ ವಿಶ್ವವಿದ್ಯಾಲಯದ ಸ್ವಾಧೀನದಲ್ಲಿರುವ ಇತರ ದಾಖಲೆಗಳು ಅಥವಾ ವಿಶ್ವವಿದ್ಯಾಲಯವು ಯುಕ್ತವಾಗಿ ನಿರ್ವಹಿಸುವ ಯಾವುದೇ ರಿಜಿಸ್ಟರ್‌ನಲ್ಲಿಯ ಯಾವುದೇ ನಮೂದುಗಳ ಪ್ರತಿಯನ್ನು, ಅದರ ಮೇಲೆ ಕುಲಸಚಿವರು ಪ್ರಮಾಣೀಕರಿಸಿದ್ದರೆ, ಅದನ್ನು ಅಂಥ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ, ಗೊತ್ತುವಳಿ ಅಥವಾ ದಾಖಲೆ ಅಥವಾ ರಿಜಿಸ್ಟರ್‌ನಲ್ಲಿ ಇರುವ ನಮೂದನ್ನು ಮೇಲ್ನೋಟದ ಸಾಕ್ಷ್ಯವೆಂಬುದಾಗಿ ಸ್ವೀಕರಿಸತಕ್ಕದ್ದು ಮತ್ತು ವಿಷಯಗಳ ಸಾಕ್ಷಿಯಾಗಿ ಅಂಗೀಕರಿಸತಕ್ಕದ್ದು ಹಾಗೂ ಮೂಲ ದಾಖಲೆಗಳನ್ನೇ ಸಲ್ಲಿಸಿದ್ದರೆ ಅದನ್ನು, ದಾಖಲಿಸಿರುವ ವಿಷಯಗಳು ಮತ್ತು ವಹಿವಾಟುಗಳ ಸಾಕ್ಷ್ಯವಾಗಿ ಅಂಗೀಕರಿಸಲಾಗುತ್ತಿತ್ತೋ, ಅದೇ ರೀತಿಯಲ್ಲಿ ಇವನ್ನೂ ಸಾಕ್ಷ್ಯವಾಗಿ ಅಂಗೀಕರಿಸತಕ್ಕದ್ದು.

**55. ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ.–** ರಾಜ್ಯಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಥವಾ ಅದರಲ್ಲಿ ಇರುವ ಯಾವುವೇ ಉಪಬಂಧಗಳನ್ನು ಅಥವಾ ಅದರಡಿಯಲ್ಲಿ ರಚಿಸಿದ ಯಾವುವೇ ನಿಯಮಗಳು ಅಥವಾ ಆದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿರ್ದೇಶನ ನೀಡುವುದು ಅವಶ್ಯವೆಂದು ಅಥವಾ ಉಚಿತವೆಂದು ಅಭಿಪ್ರಾಯಪಟ್ಟಲ್ಲಿ ಅದು ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ ಅಥವಾ ಸಂದರ್ಭಾನುಸಾರವಾಗಿ ವ್ಯವಸ್ಥಾಪನಾ ಮಂಡಳಿಯು ಅಂಥ ಪ್ರತಿಯೊಂದು ನಿರ್ದೇಶನವನ್ನು ಪಾಲಿಸತಕ್ಕದ್ದು.

**56. ದಂಡಗಳು.–** (1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿತವಾದ ನಿಯಮಗಳು ಉಪಬಂಧಗಳನ್ನು ಅಥವಾ ಯಾವುದೇ ಪರೀಕ್ಷಾ ವಿಷಯಗಳನ್ನು ಅಥವಾ ಪದವಿಗಳನ್ನು ನೀಡುವುದಕ್ಕೆ ಅಥವಾ ಅಂಕಪಟ್ಟಿಗಳನ್ನು ನೀಡುವುದಕ್ಕೆ ಸಂಬಂಧಪಟ್ಟ ವಿಷಯಗಳಲ್ಲಿ ಉಲ್ಲಂಘನೆಗಳನ್ನು ಮಾಡುವ ಯಾವೊಬ್ಬ ವ್ಯಕ್ತಿಯು, ಅಪರಾಧ ನಿರ್ಣಯವಾದ ಮೇಲೆ, ಐವತ್ತು ಸಾವಿರ ರೂಪಾಯಿಗಳಿಗೆ ಕಡಿಮೆಯಲ್ಲದ ಆದರೆ ಹತ್ತು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಆರು ತಿಂಗಳ ಅವಧಿಗಿಂತ ಕಡಿಮೆಯಲ್ಲದ ಆದರೆ ಎರಡು ವರ್ಷಗಳ ಅವಧಿಯವರೆಗೆ ವಿಸ್ತರಿಸಬಹುದಾದ ಕಾರಾವಾಸದಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು:

ಪರಂತು, ವಿಶ್ವವಿದ್ಯಾಲಯವೂ ಸಹ ಒಳಗೊಂಡಿರುವಲ್ಲಿ, ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಈ ಅಧಿನಿಯಮದ ಅಡಿಯಲ್ಲಿ ನೀಡಲಾದ ಅನುಮತಿ ಪತ್ರವನ್ನು ಹಿಂತೆಗೆದುಕೊಳ್ಳತಕ್ಕದ್ದು.

(2) ಈ ಪ್ರಕರಣದ ಅಡಿಯಲ್ಲಿನ ದಂಡವನ್ನು ಇತರ ಯಾವುದೇ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಲಾದ ದಂಡಕ್ಕೆ ಬಾಧಕವಾಗದಂತೆ ವಿಧಿಸಬಹುದು.

**57. ಪ್ರವೇಶಿಸುವ ಮತ್ತು ಪರಿಶೋಧಿಸುವ ಅಧಿಕಾರ.–** ಈ ಉದ್ದೇಶಕ್ಕಾಗಿ, ರಾಜ್ಯಸರ್ಕಾರದಿಂದ ಪ್ರಾಧಿಕೃತಗೊಂಡ 'ಎ' ಸಮೂಹದ ಅಧಿಕಾರಿ ದರ್ಜೆಗಿಂತ ಕಡಿಮೆಇಲ್ಲದ ದರ್ಜೆಯ ಯಾವೊಬ್ಬ ಅಧಿಕಾರಿಯು, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಶನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ 37) ಅಡಿಯಲ್ಲಿ ನಿರ್ದಿಷ್ಟಪಡಿಸಿರಬಹುದಾದ ಅಂಥ ಷರತ್ತುಗಳಿಗೆ ಒಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ, ಆ ಅಧಿನಿಯಮದ 9ನೇ ಪ್ರಕರಣದ ಅಡಿಯಲ್ಲಿ ಉಪಬಂಧಿಸಲಾದಂತಹವೇ ಅಧಿಕಾರಗಳನ್ನು ಚಲಾಯಿಸಲು ಮತ್ತು ಪ್ರಕಾರ್ಯಗಳನ್ನು ನೆರವೇರಿಸಲು ಅಧಿಕೃತನಾದ ಅಧಿಕಾರಿ ಎಂಬುದಾಗಿ ಭಾವಿಸತಕ್ಕದ್ದು.

**58. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ನಿರ್ದೇಶನವನ್ನು ನೀಡುವ ಅಧಿಕಾರ.–** (1) ವಿಶ್ವವಿದ್ಯಾಲಯವು ತನ್ನ ರಚನೆ ಅಥವಾ ನಿಗಮನವನ್ನು ನಿಯಂತ್ರಿಸುವ ಕಾನೂನಿಗೆ ಅನುಸಾರವಾಗಿ ತನ್ನ ಸಮಾಪನವನ್ನು ಉದ್ದೇಶಿಸಿದ್ದಲ್ಲಿ, ಅದು ಕನಿಷ್ಠ ಆರು ತಿಂಗಳ ಲಿಖಿತ ಪೂರ್ವ ಸೂಚನೆಯನ್ನು (ನೋಟಿಸು) ಸರ್ಕಾರಕ್ಕೆ ನೀಡತಕ್ಕದ್ದು.

(2) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಈ ಕೆಳಗಿನವುಗಳ ಬಗ್ಗೆ, ಎಂದರೆ:–

(i) ಪದವಿಯನ್ನು ನೀಡುವುದಕ್ಕಾಗಿ ಬೋಧನೆಯ ಗುಣಮಟ್ಟ;

(ii) ಶಿಕ್ಷಣದ ಗುಣಮಟ್ಟ;

(iii) ಉನ್ನತ ಶಿಕ್ಷಣದ ವ್ಯಾಪಾರೀಕರಣವನ್ನು ತಡೆಗಟ್ಟುವುದು;

(iv) ಅಧಿನಿಯಮದ ಉಪಬಂಧಗಳ ಉಲ್ಲಂಘನೆಯ ಬಗ್ಗೆ, ಯಾವುದಾದರೂ ಇದ್ದಲ್ಲಿ,

– ಇವುಗಳ ಬಗ್ಗೆ ನಿಯತಕಾಲಿಕ ಪರಿವೀಕ್ಷಣೆಯನ್ನು ನಡೆಸತಕ್ಕದ್ದು ಮತ್ತು ಸರ್ಕಾರಕ್ಕೆ ವರದಿಯನ್ನು ಕಳುಹಿಸತಕ್ಕದ್ದು.

(3) ದುರ್ವ್ಯವಹರಣೆ, ದುರಾಡಳಿತ ಮತ್ತು ಅಶಿಸ್ತು ಆಗಿದೆ ಎಂಬುದನ್ನು ಗುರುತಿಸಿದರೆ, ಸರ್ಕಾರವು, ವಿಶ್ವವಿದ್ಯಾಲಯದ ಆಡಳಿತವರ್ಗದವರಿಗೆ ಆಡಳಿತವನ್ನು ಸರಿಪಡಿಸಬೇಕೆಂದು ನಿರ್ದೇಶನಗಳನ್ನು ನೀಡತಕ್ಕದ್ದು. ನಿಯಮಿಸಬಹುದಾದ ಅಂಥ ಅವಧಿಯೊಳಗೆ ಆ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುವ ಹಕ್ಕು ಸರ್ಕಾರದಲ್ಲಿ ನಿಹಿತವಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ವಿಧಾನವು, ಸರ್ಕಾರವು ಈ ಸಂಬಂಧದಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು:

ಪರಂತು, ವಿಶ್ವವಿದ್ಯಾಲಯವು ತನ್ನ ಕಾರಣಗಳನ್ನು ಹೇಳಿಕೊಳ್ಳಲು ಸಮಂಜಸ ಅವಕಾಶಗಳನ್ನು ನೀಡಿದ ಹೊರತು ಅಂಥ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

(5) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೋಟಿಸನ್ನು ಸ್ವೀಕರಿಸಿದ ಮೇಲೆ, ಸರ್ಕಾರವು ಸಂಬಂಧಿಸಿದ ನಿಯಂತ್ರಣಾ ಪ್ರಾಧಿಕಾರದೊಡನೆ ಸಮಾಲೋಚಿಸಿ, ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ಅಥವಾ ವ್ಯಾಸಂಗ ಕ್ರಮವನ್ನು ಪರಿಸಮಾಪನಗೊಳಿಸಲು ಉದ್ದೇಶಿಸಿದ ದಿನಾಂಕದಿಂದ, ವಿಶ್ವವಿದ್ಯಾಲಯದಲ್ಲಿ ನಿಯತ ವ್ಯಾಸಂಗ ಕ್ರಮಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕೊನೆಯ ತಂಡ (ಬ್ಯಾಚ್) ತನ್ನ ವ್ಯಾಸಂಗ ಕ್ರಮವನ್ನು ಮುಗಿಸುವವರೆಗೆ ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು.

**59. ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು.–** (1) 58ನೇ ಪ್ರಕರಣದ (5)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ಅದರ ಆಡಳಿತಾತ್ಮಕ ವೆಚ್ಚಗಳನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ನೇಮಿಸಬಹುದಾದ ಅಂಥ ವಿಧಾನದಲ್ಲಿ ಭರಿಸತಕ್ಕದ್ದು.

(2) ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ವಿಶ್ವವಿದ್ಯಾಲಯದ ವೆಚ್ಚವನ್ನು ಭರಿಸಲು 47, 48, 49 ಮತ್ತು 50ನೇ ಪ್ರಕರಣಗಳ ಅಡಿಯಲ್ಲಿ ಉಲ್ಲೇಖಿಸಲಾದ ನಿಧಿಯು ಸಾಕಷ್ಟು ಇಲ್ಲದಿದ್ದಲ್ಲಿ, ಅಂಥ ವೆಚ್ಚವನ್ನು ಸರ್ಕಾರವು, ವಿಶ್ವವಿದ್ಯಾಲಯದ ಸ್ವತ್ತುಗಳು ಮತ್ತು ಆಸ್ತಿಗಳನ್ನು ವಿಲೇ ಮಾಡುವ ಮೂಲಕ ಭರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಸಮಾಪನೆಯು ದುರ್ವ್ಯವಹರಣೆ ಅಥವಾ ದುರಾಡಳಿತದ ಕಾರಣಗಳಿಗಾಗಿ ಆಗಿದ್ದರೆ, ಸರ್ಕಾರವು ಅಂಥ ದುರ್ವ್ಯವಹಾರಕ್ಕೆ ಅಥವಾ ದುರಾಡಳಿತಕ್ಕೆ ಹೊಣೆಯಾಗಿರುವ ವ್ಯಕ್ತಿಗಳನ್ನು ಗುರುತಿಸುವ ಮತ್ತು ಅವರ ಮೇಲೆ ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ದಂಡನೆಯನ್ನು ವಿಧಿಸಲು ಸ್ವತಂತ್ರವಾಗಿರತಕ್ಕದ್ದು.

**60. ತೊಂದರೆಗಳ ನಿವಾರಣೆಗೆ ಅಧಿಕಾರ.–** (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಅಥವಾ ಆದೇಶದ ಮೂಲಕ ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಐದು ವರ್ಷಗಳು ಮುಕ್ತಾಯವಾದ ತರುವಾಯ ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಅಧಿಸೂಚನೆ ಅಥವಾ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

**61. ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ.–** (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ಹೊರಡಿಸಲಾದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಉಭಯ ಸದನಗಳು ಒಪ್ಪಿದರೆ ತದನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ಧತಿಯು ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವನ್ನು ಉಂಟುಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಜಿ.ಕೆ.ಬೋರೇಗೌಡ

ಸರ್ಕಾರದ ಕಾರ್ಯದರ್ಶಿ

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ

ಸರ್ಕಾರಿ ಮುದ್ರಣಾಲಯ. ವಿಕಾಸ ಸೌಧ ಘಟಕ. ಬೆಂಗಳೂರು. (ಹಿ7) (500 ಪ್ರತಿಗಳು)

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| | | |
|---|---|---|
| ಭಾಗ - IV-A | ಬೆಂಗಳೂರು, ಬುಧವಾರ, ಏಪ್ರಿಲ್ ೩, ೨೦೧೩ (ಚೈತ್ರ ೧೩, ಶಕ ವರ್ಷ ೧೯೩೪) | ನಂ.೬೬೭ |
| Part - IV-A | Bangalore, Wednesday, April 3, 2013 (Chaithra 13, Shaka Varsha 1934) | No. 667 |


ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಸಚಿವಾಲಯ

**ಅಧಿಸೂಚನೆ**

**ಸಂಖ್ಯೆ: ಸಂವ್ಯಶಾಇ 11 ಶಾಸನ 2012, ಬೆಂಗಳೂರು, ದಿನಾಂಕ: 03.04.2013**

ಮಣಿಪಾಲ್ ವಿಶ್ವವಿದ್ಯಾಲಯ ಬೆಂಗಳೂರು ವಿಧೇಯಕ, 2012– ಇದಕ್ಕೆ 2013ರ ಫೆಬ್ರವರಿ ತಿಂಗಳ ಇಪತ್ತೈದನೇ ದಿನಾಂಕದಂದು ಘನತೆವೆತ್ತ ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2013ರ ಕರ್ನಾಟಕ ಅಧಿನಿಯಮ ಸಂಖ್ಯೆ:46 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2013 ರ ಕರ್ನಾಟಕ ಅಧಿನಿಯಮ ಸಂಖ್ಯೆ: 46**

(2013ರ ಏಪ್ರಿಲ್ ಮಾಹೆಯ ಮೂರನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಮಣಿಪಾಲ್ ವಿಶ್ವವಿದ್ಯಾಲಯ ಬೆಂಗಳೂರು ಅಧಿನಿಯಮ, 2012**

(2013ರ ಫೆಬ್ರವರಿ ಮಾಹೆಯ ಇಪ್ಪತ್ತೈದನೇ ದಿನಾಂಕದಂದು ರಾಜ್ಯಪಾಲರ ಅನುಮತಿಯನ್ನು ಪಡೆಯಲಾಗಿದೆ)

ಕಲೆ, ವಿಜ್ಞಾನ, ವಾಣಿಜ್ಯ, ಕಾನೂನು, ಇಂಜನಿಯರಿಂಗ್, ವೈದ್ಯಕೀಯ, ಫಾರ್ಮಸಿ, ದಂತ ವೈದ್ಯಕೀಯ, ನರ್ಸಿಂಗ್, ವ್ಯವಸ್ಥಾಪನೆ, ಆತಿಥ್ಯ, ಸಂಗೀತ, ಭಾಷಾ ವಿಜ್ಞಾನ ಮತ್ತು ತತ್ಸಂಬಂಧಿ ವಲಯಗಳಲ್ಲಿ ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಉತ್ತೇಜಿಸಲು ಮತ್ತು ಕೈಗೊಳ್ಳಲು ಖಾಸಗಿ ವಲಯದಲ್ಲಿ ಮಣಿಪಾಲ್ ಶಿಕ್ಷಣ ಪ್ರತಿಷ್ಠಾನ ನ್ಯಾಸದ ಮೂಲಕ ಏಕಾತ್ಮಕ ಸ್ವರೂಪದ ಒಂದು ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದಕ್ಕಾಗಿ ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡು ಬರುವ ಉದ್ದೇಶಗಳಿಗಾಗಿ ಕಲೆ, ವಿಜ್ಞಾನ, ವಾಣಿಜ್ಯ, ಕಾನೂನು, ಇಂಜನಿಯರಿಂಗ್, ವೈದ್ಯಕೀಯ, ಫಾರ್ಮಸಿ, ದಂತ ವೈದ್ಯಕೀಯ, ನರ್ಸಿಂಗ್, ವ್ಯವಸ್ಥಾಪನೆ, ಆತಿಥ್ಯ, ಸಂಗೀತ, ಭಾಷಾ ವಿಜ್ಞಾನ ಮತ್ತು ತತ್ಸಂಬಂಧಿ ವಲಯಗಳಲ್ಲಿ ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಉತ್ತೇಜಿಸಲು ಮತ್ತು ಕೈಗೊಳ್ಳಲು ಖಾಸಗಿ ವಲಯದಲ್ಲಿ ಮಣಿಪಾಲ್ ಶಿಕ್ಷಣ ಪ್ರತಿಷ್ಠಾನ ನ್ಯಾಸದ ಮೂಲಕ ಏಕಾತ್ಮಕ ಸ್ವರೂಪದ ಒಂದು ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೂರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:–

ಅಧ್ಯಾಯ – I

ಪ್ರಾರಂಭಿಕ

1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.– (1) ಈ ಅಧಿನಿಯಮವನ್ನು ಮಣಿಪಾಲ್ ವಿಶ್ವವಿದ್ಯಾಲಯ ಬೆಂಗಳೂರು ಅಧಿನಿಯಮ, 2012 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು, ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. ಪರಿಭಾಷೆಗಳು.**- ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) "ಶೈಕ್ಷಣಿಕ ಪರಿಷತ್ತು (ಅಕೆಡೆಮಿಕ್ ಕೌನ್ಸಿಲ್)" ಎಂದರೆ, 25ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿಸಲಾದ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು;

(ಬಿ) "ಕಾರ್ಯಸೂಚಿ ವಿಷಯಗಳು", ಎಂದರೆ, ಪರಿನಿಯಮಗಳಲ್ಲಿ ಹೆಸರಿಸಬಹುದಾದ ಮತ್ತು ಒಂದು ಸಭೆಯಲ್ಲಿ ಆ ವಿಷಯಗಳನ್ನು ಮತ್ತು ಕಲಾಪಗಳನ್ನು ಅನುಮೋದಿಸಬಹುದೆಂದು ತಮ್ಮ ಸಮ್ಮತಿ ಸೂಚಿಸಿ ಕುಲಾಧಿಪತಿಯವರು ಮುಂಚಿತವಾಗಿಯೇ ಲಿಖಿತ ಅನುಮೋದನೆಯನ್ನು ಕೊಟ್ಟಿದ್ದಾಗ ಮಾತ್ರವೇ ಸಂದರ್ಭಾನುಸಾರ ಪ್ರಬಂಧಕರ ಮಂಡಳಿ ಅಥವಾ ವ್ಯವಸ್ಥಾಪನಾ ಮಂಡಳಿ ಅಥವಾ ಶೈಕ್ಷಣಿಕ ಪರಿಷತ್ತು ಅಥವಾ ಯಾವುದೇ ಸಮಿತಿಯವರು ಕಾರ್ಯಸೂಚಿಯಲ್ಲಿ ಸೇರಿಸಬಹುದಾದ ಅಥವಾ ಸಭೆಯಲ್ಲಿ ಚರ್ಚೆಗೆ ತೆಗೆದುಕೊಂಡು ನಿರ್ಣಯವನ್ನು ಕೊಡಬಹುದಾದ ಎಲ್ಲಾ ವಿಷಯಗಳು ಮತ್ತು ಕಲಾಪಗಳು;

(ಸಿ) "ಪ್ರಬಂಧಕರ ಮಂಡಳಿ" ಎಂದರೆ, 23ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಪ್ರಬಂಧಕರ ಮಂಡಳಿ;

(ಡಿ) "ವ್ಯವಸ್ಥಾಪನಾ ಮಂಡಳಿ" ಎಂದರೆ, 24ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಆಡಳಿತ ಮಂಡಳಿ;

(ಇ) "ಕುಲಾಧಿಪತಿ", "ಕುಲಪತಿ", "ಸಹಕುಲಪತಿ" ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ ಮತ್ತು ಸಹಕುಲಪತಿ;

(ಎಫ್) "ಕ್ಯಾಂಪಸ್" ಎಂದರೆ, ಅದು ಎಲ್ಲಾದರೂ ಇರಲಿ ವಿಶ್ವವಿದ್ಯಾಲಯವು ಸ್ಥಾಪಿಸಿದ, ನಿರ್ವಹಿಸುವ ಒಂದು ಕ್ಯಾಂಪಸ್;

(ಜಿ) "ಸಮಿತಿಗಳು" ಎಂದರೆ, ಈ ಅಧಿನಿಯಮದಡಿಯಲ್ಲಿ ರೂಪಿಸಲಾದ ಸಮಿತಿಗಳು ಅಥವಾ ಸಂದರ್ಭಾನುಸಾರವಾಗಿ ವಿಶ್ವವಿದ್ಯಾಲಯದ ವಿವಿಧ ಕಾರ್ಯಕರ್ತರು ರಚಿಸಿರುವ ಸಮಿತಿಗಳು ಮತ್ತು ಅದರಲ್ಲಿ ನಾಮನಿರ್ದೇಶನ ಸಮಿತಿ, ಹಣಕಾಸು ಸಮಿತಿ ಮತ್ತು ಅಂಥ ಇತರ ಸಮಿತಿಗಳು ಒಳಗೊಳ್ಳುತ್ತವೆ;

(ಎಚ್) "ಘಟಕ ಕಾಲೇಜು" ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುತ್ತಿರುವ ಒಂದು ಕಾಲೇಜು ಅಥವಾ ಸಂಸ್ಥೆ;

(ಐ) "ಹಣಕಾಸು ಸಮಿತಿ" ಎಂದರೆ, 27ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಹಣಕಾಸು ಸಮಿತಿ;

(ಜೆ) "ಪ್ರತಿಷ್ಠಾನ" ಎಂದರೆ ಭಾರತೀಯ ನ್ಯಾಸ ಅಧಿನಿಯಮ, 1882ರ ಅಡಿಯಲ್ಲಿ ನೋಂದಣಿಯಾದ ಮಣಿಪಾಲ್ ಶಿಕ್ಷಣ ಪ್ರತಿಷ್ಠಾನ ನ್ಯಾಸ;

(ಕೆ) "ಸರ್ಕಾರ" ಎಂದರೆ, ಕರ್ನಾಟಕ ಸರ್ಕಾರ;

(ಎಲ್) "ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳು" ಎಂದರೆ, ವಿಶ್ವವಿದ್ಯಾಲಯ ಅನುದಾನ ಆಯೋಗ, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು, ರಾಷ್ಟ್ರೀಯ ಬೋಧಕ ಶಿಕ್ಷಣ ಪರಿಷತ್ತು, ಭಾರತೀಯ ವೈದ್ಯಕೀಯ ಪರಿಷತ್ತು, ಭಾರತೀಯ ಔಷಧ ವಿಜ್ಞಾನ ಪರಿಷತ್ತು, ರಾಷ್ಟ್ರೀಯ ಮೌಲ್ಯಮಾಪನ ಮತ್ತು ಅಧಿಮಾನ್ಯತಾ ಪರಿಷತ್ತು, ಭಾರತೀಯ ಕೃಷಿ ಸಂಶೋಧನಾ ಪರಿಷತ್ತು, ದೂರಶಿಕ್ಷಣ ಪರಿಷತ್ತು, ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಪರಿಷತ್ತು ಮುಂತಾದವುಗಳು, ಉನ್ನತ ಶಿಕ್ಷಣದಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುವಂತೆ ನೋಡಿಕೊಳ್ಳುವುದಕ್ಕಾಗಿ ಗುಣಮಟ್ಟಗಳು ಮತ್ತು ಷರತ್ತುಗಳನ್ನು ವಿಧಿಸುವುದಕ್ಕಾಗಿ, ಕೇಂದ್ರ ಸರ್ಕಾರವು ಸ್ಥಾಪಿಸಿರುವ ಒಂದು ಸಂಸ್ಥೆ ಮತ್ತು ಇದರಲ್ಲಿ ಸರ್ಕಾರವೂ ಸೇರಿರುತ್ತದೆ;

(ಎಂ) "ನಿಯಮಿಸಲಾದುದು" ಎಂದರೆ, ಸರ್ಕಾರವು ಈ ಅಧಿನಿಯಮದಡಿಯಲ್ಲಿ ರಚಿಸಿದ ನಿಯಮಗಳ ಮೂಲಕ ನಿಯಮಿಸಲಾದುದು;

(ಎನ್) "ಒಂದು ಘಟಕ ಕಾಲೇಜಿಗೆ ಸಂಬಂಧಪಟ್ಟಂತೆ ಪ್ರಾಂಶುಪಾಲರು" ಎಂದರೆ ಘಟಕ ವಿದ್ಯಾಲಯ ಅಥವಾ ಘಟಕ ಕಾಲೇಜಿನ ಮುಖ್ಯಸ್ಥರು ಮತ್ತು ಪ್ರಾಂಶುಪಾಲರು ನೇಮಕವಾಗದಿದ್ದಲ್ಲಿ ಅಥವಾ ನೇಮಕವಾದ ಪ್ರಾಂಶುಪಾಲರ ಗೈರುಹಾಜರಿಯಲ್ಲಿ, ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ತಾತ್ಕಾಲಿಕವಾಗಿ ನೇಮಕಗೊಂಡಿರುವ ಉಪಪ್ರಾಂಶುಪಾಲರು ಅಥವಾ ಯಾವುದೇ ಇತರ ವ್ಯಕ್ತಿಯೂ ಇದರಲ್ಲಿ ಒಳಗೊಳ್ಳುತ್ತಾರೆ;

(ಒ) "ಕುಲಸಚಿವರು" ಎಂದರೆ, ವಿಶ್ವವಿದ್ಯಾಲಯದ ಕುಲಸಚಿವರು;

(ಪಿ) "ಪ್ರಾದೇಶಿಕ ಕೇಂದ್ರ" ಎಂದರೆ, ಯಾವುದೇ ಪ್ರದೇಶದಲ್ಲಿನ ಅಧ್ಯಯನ ಕೇಂದ್ರಗಳ ಕಾರ್ಯವನ್ನು ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ಮಾಡುವ ಉದ್ದೇಶಕ್ಕಾಗಿ ಮತ್ತು ಅಂಥ ಕೇಂದ್ರಕ್ಕೆ ವ್ಯವಸ್ಥಾಪನಾ ಮಂಡಳಿಯು ವಹಿಸಿಕೊಡಬಹುದಾದ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸುವುದಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಅಥವಾ ನಿರ್ವಹಿಸಿಕೊಂಡುಬರುವ ಒಂದು ಕೇಂದ್ರ;

(ಕ್ಯೂ) ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ "ಪ್ರಾಯೋಜಕ ಪ್ರಾಧಿಕಾರ" ಅಥವಾ "ಪ್ರಾಯೋಜಕ ಸಂಸ್ಥೆ" ಎಂದರೆ, ಪ್ರತಿಷ್ಠಾನ;

(ಆರ್) "ರಾಜ್ಯ" ಎಂದರೆ, ಕರ್ನಾಟಕ ರಾಜ್ಯ;

(ಎಸ್) "ಪರಿನಿಯಮಗಳು" ಮತ್ತು "ವಿನಿಯಮಗಳು" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಅನುಕ್ರಮವಾಗಿ ವಿಶ್ವವಿದ್ಯಾಲಯದ ಪರಿನಿಯಮಗಳು ಮತ್ತು ವಿನಿಯಮಗಳು;

(ಟಿ) "ಅಧ್ಯಯನ ಕೇಂದ್ರ" ಎಂದರೆ, ದೂರ ಶಿಕ್ಷಣದ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಅಗತ್ಯವಾದ ಬುದ್ಧಿವಾದ, ಸಲಹೆಗಳನ್ನು ನೀಡುವ ಅಥವಾ ಇತರ ಯಾವುದೇ ನೆರವನ್ನು ನೀಡುವ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಮತ್ತು ನಿರ್ವಹಿಸಿಕೊಂಡು ಬಂದ ಒಂದು ಕೇಂದ್ರ;

(ಯು) "ಅಧ್ಯಾಪಕರು" ಎಂದರೆ, ಒಬ್ಬ ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಪ್ರವಾಚಕರು ಅಥವಾ ಉಪನ್ಯಾಸಕರು ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಒಂದು ಘಟಕ ಕಾಲೇಜಿನಲ್ಲಿ ಬೋಧಿಸುವುದಕ್ಕೆ ಅಥವಾ ಸಂಶೋಧನೆ ನಡೆಸುವುದಕ್ಕೆ ಅಥವಾ ಸಂಶೋಧನೆಗೆ ಮಾರ್ಗದರ್ಶನ ನೀಡುವುದಕ್ಕೆ ನೇಮಕವಾದ ಅಂಥ ಇತರ ವ್ಯಕ್ತಿ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗವು ನಿಯಮಿಸಿದ ಗುಣಮಟ್ಟಗಳಿಗೆ ಅನುಸಾರವಾಗಿ ಇರುವ ಘಟಕ ಕಾಲೇಜಿನ ಪ್ರಾಂಶುಪಾಲರು ಇದರಲ್ಲಿ ಒಳಗೊಳ್ಳುತ್ತಾರೆ;

(ವಿ) "ವಿಶ್ವವಿದ್ಯಾಲಯ ಅನುದಾನಗಳ ಆಯೋಗ" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) 4ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ಆಯೋಗ;

(ಡಬ್ಲ್ಯೂ) "ವಿಶ್ವವಿದ್ಯಾಲಯ" ಎಂದರೆ, ಈ ಅಧಿನಿಯಮದಡಿಯಲ್ಲಿ ಸ್ಥಾಪಿಸಿ ನಿಗಮಿತಗೊಳಿಸಲಾದ ಮಣಿಪಾಲ್ ವಿಶ್ವವಿದ್ಯಾಲಯ ಬೆಂಗಳೂರು;

(ಎಕ್ಸ್) "ಸಂದರ್ಶಕರು" ಎಂದರೆ, 13ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ವಿಶ್ವವಿದ್ಯಾಲಯದ ಸಂದರ್ಶಕರು.

## ಅಧ್ಯಾಯ– II

## ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

**3. ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ.–** (1) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಹಕ್ಕನ್ನು ಪ್ರತಿಷ್ಠಾನವು ಹೊಂದಿರತಕ್ಕದ್ದು.

(2) ಪ್ರತಿಷ್ಠಾನವು ರಾಜ್ಯ ಸರ್ಕಾರಕ್ಕೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವವನ್ನು ಸಲ್ಲಿಸತಕ್ಕದ್ದು.

(3) ಪ್ರಸ್ತಾಪವು ಈ ಮುಂದಿನ ವಿವರಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಪ್ರತಿಷ್ಠಾನದ ವಿವರಗಳೊಂದಿಗೆ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು;

(ii) ವಿಶ್ವವಿದ್ಯಾಲಯದ ವ್ಯಾಪ್ತಿ ಮತ್ತು ಸ್ಥಾನಮಾನ ಹಾಗೂ ಭೂಮಿಯ ಲಭ್ಯತೆ;

(iii) ಪ್ರಾರಂಭದ ದಿನಾಂಕದಿಂದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳಬೇಕೆಂದಿರುವ ಅಧ್ಯಯನ ಮತ್ತು ಸಂಶೋಧನಾ ಕಾರ್ಯಕ್ರಮಗಳ ಸ್ವರೂಪ ಮತ್ತು ಬಗೆಗಳು;

(iv) ಪ್ರಾರಂಭಿಸಬೇಕೆಂದು ಪ್ರಸ್ತಾಪಿಸಿರುವ ವ್ಯಾಸಂಗ ವಿಭಾಗಗಳು (ಫ್ಯಾಕಲ್ಟಿಗಳು), ಅಧ್ಯಯನ ಕ್ರಮಗಳು ಮತ್ತು ಸಂಶೋಧನೆಗಳ ಸ್ವರೂಪ;

(v) ಕಟ್ಟಡಗಳು, ಸಲಕರಣೆಗಳು ಮತ್ತು ರಚನಾ ಸೌಕರ್ಯಗಳನ್ನು ಒದಗಿಸುವಂಥ ಕ್ಯಾಂಪಸ್ ಅಭಿವೃದ್ಧಿ;

(vi) ಪ್ರಾರಂಭದ ದಿನಾಂಕದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಗಾಗಿ ಬಂಡವಾಳ ವೆಚ್ಚದ ಹಂತಗಳು;

(vii) ಬಾಬುವಾರು ಆವರ್ತಕ ವೆಚ್ಚ, ಆರ್ಥಿಕ ಮೂಲಗಳು ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ತಗಲುವ ಅಂದಾಜು ವೆಚ್ಚ;

(viii) ಸಂಪನ್ಮೂಲ ಸಂಗ್ರಹಣೆಗಾಗಿ ಯೋಜನೆ ಮತ್ತು ಅದಕ್ಕೆ ಬಂಡವಾಳದಿಂದ ತಗಲುವ ವೆಚ್ಚ ಹಾಗೂ ಪ್ರತಿಯೊಂದು ಮೂಲಕ್ಕೂ ಮರು ಸಂದಾಯ ಮಾಡುವ ರೀತಿ;

(ix) ವಿದ್ಯಾರ್ಥಿಗಳಿಂದ ಶುಲ್ಕ ವಸೂಲು ಮಾಡಿ ಆಂತರಿಕವಾಗಿ ನಿಧಿ ಸಂಗ್ರಹಿಸುವ ಯೋಜನೆ, ಸಲಹಾ ಸೇವೆ ಮತ್ತು ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಿಗೆ ಸಂಬಂಧಿಸಿದ ಇತರ ಚಟುವಟಿಕೆಗಳಿಂದ ನಿರೀಕ್ಷಿತ ವರಮಾನಗಳು ಮತ್ತು ಇತರ ನಿರೀಕ್ಷಿತ ವರಮಾನಗಳು;

(x) ಘಟಕವೊಂದಕ್ಕೆ ತಗಲುವ ವೆಚ್ಚದ ವಿವರಗಳು. ಆರ್ಥಿಕವಾಗಿ ದುರ್ಬಲವಾದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕ, ಉಚಿತ ಶಿಕ್ಷಣ (ಫ್ರಿಶಿಪ್) ಮತ್ತು ವಿದ್ಯಾರ್ಥಿ ವೇತನದಲ್ಲಿ ನೀಡುವ ರಿಯಾಯಿತಿ ಅಥವಾ ವಿನಾಯತಿಯ ಪರಿಮಿತಿಯ ವಿವರಗಳನ್ನು ಮತ್ತು ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳಿಗೆ ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳು ಪ್ರಾಯೋಜಿಸಿದ ವಿದ್ಯಾರ್ಥಿಗಳಿಗೆ ಮತ್ತು ಭಾರತವನ್ನುಳಿದು ಇತರ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ವಿಧಿಸತಕ್ಕ ಶುಲ್ಕದ ದರಗಳು ಬೇರೆ ಬೇರೆ ಇದ್ದಲ್ಲಿ ಅವುಗಳನ್ನು ಸೂಚಿಸುವ ಶುಲ್ಕ ರಚನೆಯ ವಿವರಗಳು;

(xi) ಸಂಬಂಧಪಟ್ಟ ವಿದ್ಯಾ ವಿಭಾಗದಲ್ಲಿ ಎಷ್ಟು ವರ್ಷಗಳ ಅನುಭವ ಮತ್ತು ಪರಿಣಿತಿಯನ್ನು ಪ್ರತಿಷ್ಠಾನವು ದೊರಕಿಸಿಕೊಡಲಿದೆ ಹಾಗೂ ಅದರ ಹಣಕಾಸಿನ ಸಂಪನ್ಮೂಲಗಳು;

(xii) ವಿಶ್ವವಿದ್ಯಾಲಯದಲ್ಲಿರುವ ಅಧ್ಯಯನ ಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕಾಗಿ ಇರುವ ವ್ಯವಸ್ಥೆ;

(xiii) ವಿಶ್ವವಿದ್ಯಾಲಯವು ಸ್ಥಾಪನೆಯಾಗುವುದಕ್ಕೆ ಮೊದಲು ನೆರವೇರಿಸಬೇಕೆಂದು ರಾಜ್ಯ ಸರ್ಕಾರವು ಅಗತ್ಯಪಡಿಸಬಹುದಾದ ಅಂಥ ಇತರ ಷರತ್ತುಗಳ ನೆರವೇರಿಕೆಯ ಹಂತ.

(4) ಸ್ವೀಕರಿಸಿದ ಪ್ರಸ್ತಾವಗಳನ್ನು ಪರೀಕ್ಷಿಸಲು ರಾಜ್ಯ ಸರ್ಕಾರವು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಪದನಿಮಿತ್ತ ಸದಸ್ಯರಾದ ಮೂರು ಸದಸ್ಯರುಗಳನ್ನು ಒಳಗೊಂಡ ಒಂದು ಪರಿಶೋಧನಾ ಸಮಿತಿಯನ್ನು ರಚಿಸತಕ್ಕದ್ದು ಮತ್ತು ಅದು ರಾಜ್ಯ ಸರ್ಕಾರಕ್ಕೆ ಶಿಫಾರಸ್ಸನ್ನು ಮಾಡತಕ್ಕದ್ದು.

**4. ವಿಶ್ವವಿದ್ಯಾಲಯದ ಸ್ಥಾಪನೆ.–** (1) ರಾಜ್ಯ ಸರ್ಕಾರವು ಪರಿಶೋಧನಾ ಸಮಿತಿಯು ಮಾಡಿದ ಶಿಫಾರಸ್ಸುಗಳನ್ನು ಪರಿಶೀಲಿಸಿದ ತರುವಾಯ ಮತ್ತು ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ,–

(i) ನ್ಯಾಸವು ಸಾಕಷ್ಟು ಮೂಲ ಸೌಕರ್ಯದೊಂದಿಗೆ ವಿಶ್ವವಿದ್ಯಾಲಯವೊಂದನ್ನು ನಡೆಸಲು ಸಮರ್ಥವಾಗಿದೆ ಎಂದು ಅದು ಮನಗಂಡರೆ;

(ii) ಪ್ರದೇಶಕ್ಕನುಸಾರವಾಗಿ ಕೆಳಗೆ ನಿರ್ದಿಷ್ಟ ಪಡಿಸಿದ ವ್ಯಾಪ್ತಿಗೆ ಭೂಮಿಯ ಒಡೆತನವನ್ನು ಹೊಂದಿರತಕ್ಕದ್ದು, ಎಂದರೆ:–

(ಎ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯೊಳಗಿದ್ದರೆ ಇಪ್ಪತ್ತೈದು ಎಕರೆಗಳು;

(ಬಿ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮಿತಿಯಿಂದ ಹೊರಗೆ ಇದ್ದು ಆದರೆ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಪ್ರದೇಶದ ಒಳಗೆ ಇದ್ದರೆ ನಲವತ್ತು ಎಕರೆಗಳು;

(ಸಿ) ಭೂಮಿಯು (ಎ) ಮತ್ತು (ಬಿ) ಖಂಡಗಳಲ್ಲಿ ನಿರ್ದಿಷ್ಟಪಡಿಸಿದ ಸ್ಥಳಗಳನ್ನು ಹೊರತುಪಡಿಸಿದ್ದರೆ ಅರವತ್ತು ಎಕರೆಗಳಿಗಿಂತ ಕಡಿಮೆ ಇರತಕ್ಕದ್ದಲ್ಲ.

ಮೇಲೆ ನಿರ್ದಿಷ್ಟಪಡಿಸಿದ ಭೂಮಿಯು ಏಕ ಘಟಕ(ಸಿಂಗಲ್ ಬ್ಲಾಕ್) ದಲ್ಲಿರತಕ್ಕದ್ದು ಮತ್ತು ಇದು ಸಂಬಂಧಪಟ್ಟ ನ್ಯಾಸ /ಪ್ರತಿಷ್ಠಾನ/ ಸಂಸ್ಥೆ/ ವಿಶ್ವವಿದ್ಯಾಲಯದ ಹೆಸರಿನಲ್ಲಿರತಕ್ಕದ್ದು. 3ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ಅಗತ್ಯಪಡಿಸಲಾದಂತೆ ನ್ಯಾಸವು ಒದಗಿಸಿದ ವಿವರಗಳ ಆಧಾರದ ಮೇಲೆ ಸರ್ಕಾರವು 47ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಬೇಕೆಂದು ನ್ಯಾಸಕ್ಕೆ ನಿರ್ದೇಶನ ನೀಡಬಹುದು.

(2) ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಸ್ಥಾಪನೆಯ ತರುವಾಯ, ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, "ಮಣಿಪಾಲ್ ವಿಶ್ವವಿದ್ಯಾಲಯ ಬೆಂಗಳೂರು" ಎಂಬ ಹೆಸರಿನ ಏಕಾತ್ಮಕ ಸ್ವರೂಪದ ಒಂದು ವಿಶ್ವವಿದ್ಯಾಲಯವನ್ನು ರಾಜ್ಯದಲ್ಲಿ ಸ್ಥಾಪಿಸುವುದಕ್ಕೆ ಮಂಜೂರಾತಿಯನ್ನು ನೀಡಬಹುದು.

(3) ವಿಶ್ವವಿದ್ಯಾಲಯದ ಕೇಂದ್ರಕಾರ್ಯಸ್ಥಾನವು ದೊಡ್ಡಬಳ್ಳಾಪುರದಲ್ಲಿ ಇರತಕ್ಕದ್ದು. ವಿಶ್ವವಿದ್ಯಾಲಯವು ತನ್ನ ಕ್ಯಾಂಪಸ್ಸುಗಳನ್ನು ಅಥವಾ ಪ್ರಾದೇಶಿಕ ಕೇಂದ್ರಗಳನ್ನು, ಅಧ್ಯಯನ ಕೇಂದ್ರಗಳನ್ನು ಕರ್ನಾಟಕದ ಯಾವುದೇ ಭಾಗದಲ್ಲಿ ಮತ್ತು ಆ ಬಗ್ಗೆ ರಾಜ್ಯ ಸರ್ಕಾರದ ಪೂರ್ವಾನುಮತಿಯನ್ನು ಪಡೆದುಕೊಳ್ಳುವುದಕ್ಕೊಳಪಟ್ಟು ಹಾಗೂ ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗನುಸಾರವಾಗಿ ಹೊಂದಿರತಕ್ಕದ್ದು.

(4) ಮೊದಲ ಕುಲಾಧಿಪತಿಯವರು, ಮೊದಲ ಕುಲಪತಿಯವರು, ಪ್ರಬಂಧಕ ಮಂಡಳಿಯ ಮೊದಲ ಸದಸ್ಯರುಗಳು, ವ್ಯವಸ್ಥಾಪನಾ ಮಂಡಳಿಯ ಹಾಗೂ ಶೈಕ್ಷಣಿಕ ಪರಿಷತ್ತಿನ ಮೊದಲ ಸದಸ್ಯರುಗಳು ಮತ್ತು ಇನ್ನು ಮುಂದೆ, ಅಂಥ ಅಧಿಕಾರಿಗಳು ಅಥವಾ ಸದಸ್ಯರುಗಳಾಗಬಹುದಾದಂಥ ಎಲ್ಲಾ ವ್ಯಕ್ತಿಗಳು, ಅಂಥ ಪದ ಅಥವಾ ಸದಸ್ಯತ್ವವನ್ನು ಹೊಂದಿರುವುದು

ಮುಂದುವರೆಯುವವರೆಗೆ, ಒಂದು ನಿಗಮಿತ ನಿಕಾಯವನ್ನು ರಚಿಸತಕ್ಕದ್ದು. ಮತ್ತು ಅದು ವಿಶ್ವವಿದ್ಯಾಲಯದ ಹೆಸರಿನಲ್ಲಿ ದಾವೆ ಹೂಡಬಹುದು ಮತ್ತು ದಾವೆಗೊಳಗಾಗಬಹುದು.

(5) (2)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯವು ಸ್ಥಾಪನೆಗೆ ಮಂಜೂರಾತಿಯಾದ ಮೇಲೆ, ವಿಶ್ವವಿದ್ಯಾಲಯದ ಉದ್ದೇಶಕ್ಕಾಗಿ, ಪ್ರತಿಷ್ಠಾನವು ಆರ್ಜಿಸಿದ, ಸೃಜಿಸಿದ, ಏರ್ಪಾಟು ಮಾಡಿಕೊಂಡ ಅಥವಾ ಕಟ್ಟಲ್ಪಟ್ಟ ಭೂಮಿ ಮತ್ತು ಇತರ ಸ್ಥಿರ ಮತ್ತು ಚರ ಸ್ವತ್ತು, ವಿಶ್ವವಿದ್ಯಾಲಯದಲ್ಲಿ ನಿಹಿತವಾಗಿರತಕ್ಕದ್ದು.

(6) ವಿಶ್ವವಿದ್ಯಾಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದ ಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂಥ ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

(7) ವಿಶ್ವವಿದ್ಯಾಲಯದಲ್ಲಿನ ಭೂಮಿ, ಕಟ್ಟಡ ಮತ್ತು ಇತರ ಸ್ವತ್ತುಗಳನ್ನು ವಿಶ್ವವಿದ್ಯಾಲಯದ ಉದ್ದೇಶಗಳಿಗೆ ಆನುಷಂಗಿಕವಾಗಿರುವುದನ್ನು ಹೊರತುಪಡಿಸಿ ಯಾವುದೇ ಇತರ ಉದ್ದೇಶಕ್ಕಾಗಿ ಬಳಸತಕ್ಕದ್ದಲ್ಲ.

**5. ಅನುದಾನಗಳು ಮತ್ತು ಹಣಕಾಸು ನೆರವು.–** ವಿಶ್ವವಿದ್ಯಾಲಯವು ಸ್ವಂತ ಧನಮೂಲ ಉಳ್ಳದ್ದಾಗಿರತಕ್ಕದ್ದು ಮತ್ತು ರಾಜ್ಯದಿಂದ ಅಥವಾ ರಾಜ್ಯದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಇತರ ಸಂಸ್ಥೆ ಅಥವಾ ನಿಗಮದಿಂದ ಯಾವುದೇ ನಿರ್ವಹಣಾ ಸಹಾಯ ಅನುದಾನ ಅಥವಾ ಯಾವುದೇ ಹಣಕಾಸು ನೆರವನ್ನು ಹಕ್ಕಿನಿಂದ ಕೇಳತಕ್ಕದ್ದಲ್ಲ ಅಥವಾ ಅದನ್ನು ಪಡೆಯಲು ಹಕ್ಕನ್ನು ಹೊಂದಿರತಕ್ಕದ್ದಲ್ಲ:

ಪರಂತು, ರಾಜ್ಯವು,–

(ಎ) ಇತರ ರಾಜ್ಯ ಸರ್ಕಾರದ ಸಂಘಟನೆಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿರುವಂಥದ್ದೇ ಸಂಶೋಧನೆ, ಅಭಿವೃದ್ಧಿ ಮತ್ತಿತರ ಚಟುವಟಿಕೆಗಳಿಗಾಗಿ; ಅಥವಾ

(ಬಿ) ಸರ್ಕಾರದಿಂದ ನೆರವನ್ನು ಪಡೆಯುವ ಯಾವುದೇ ನಿರ್ದಿಷ್ಟ ಸಂಶೋಧನೆ ಅಥವಾ ಕಾರ್ಯಕ್ರಮಗಳಿಗಾಗಿ; ಮತ್ತು

(ಸಿ) ರಾಜ್ಯ ಕಾರ್ಯನೀತಿಯ ಬದಲಾವಣೆಗೆ ಒಳಪಟ್ಟು ಅಥವಾ ಅನ್ಯಥಾ ಇದೇ ಬಗೆಯ ವಿಶ್ವವಿದ್ಯಾಲಯಗಳಿಗೆ ಅವಕಾಶವನ್ನು ಕಲ್ಪಿಸುವುದಕ್ಕೆ ಅಥವಾ ಅವುಗಳ ಪ್ರಯೋಜನಕ್ಕಾಗಿ,

–ಅನುದಾನದ ಮೂಲಕ ಅಥವಾ ಅನ್ಯಥಾ ಹಣಕಾಸು ಬೆಂಬಲವನ್ನು ಒದಗಿಸಬಹುದು:

ಮತ್ತು ಪರಂತು, ವಿಶ್ವವಿದ್ಯಾಲಯವು, ಯಾವುದೇ ಇತರ ಮೂಲದಿಂದ ಯಾವುದೇ ಆರ್ಥಿಕ ನೆರವನ್ನು ಸ್ವೀಕರಿಸಬಹುದು.

**6. ಘಟಕ ಕಾಲೇಜು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಅಥವಾ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದಕ್ಕೆ ಅಧಿಕಾರ.–** ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಐದು ವರ್ಷಗಳನ್ನು ಪೂರ್ಣಗೊಳಿಸಿದ ನಂತರ ವಿಶ್ವವಿದ್ಯಾಲಯ ಅನುದಾನ ಆಯೋಗದ ಮತ್ತು ಇತರ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ಗುಣಮಟ್ಟಗಳಿಗೆ ಒಳಪಟ್ಟು, ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ವಿಶ್ವವಿದ್ಯಾಲಯವು, ರಾಜ್ಯದಲ್ಲಿ ತನಗೆ ಸೂಕ್ತವೆನಿಸುವಂಥ ಸ್ಥಳಗಳಲ್ಲಿ ಘಟಕ ಕಾಲೇಜುಗಳು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದಿರಬಹುದು.

**7. ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು.–** ವಿಶ್ವವಿದ್ಯಾಲಯವು, ತನ್ನ ಭವಿಷ್ಯದ್‌ದೃಷ್ಟಿ ಮತ್ತು ಧ್ಯೇಯೋದ್ದೇಶಗಳನ್ನು ಸಾಧಿಸಲು ಈ ಮುಂದಿನಂತೆ ವಿವಿಧ ಬಗೆಯ ಕಾರ್ಯತಂತ್ರಗಳನ್ನು ಕೈಗೊಳ್ಳಬಹುದು:–

(i) ಕಲೆ, ವಿಜ್ಞಾನ, ವಾಣಿಜ್ಯ, ಕಾನೂನು, ಇಂಜಿನಿಯರಿಂಗ್, ವೈದ್ಯಕೀಯ, ಫಾರ್ಮಸಿ, ದಂತ ವೈದ್ಯಕೀಯ, ನರ್ಸಿಂಗ್, ವ್ಯವಸ್ಥಾಪನೆ, ಆತಿಥ್ಯ, ಸಂಗೀತ, ಭಾಷಾ ವಿಜ್ಞಾನ ಮತ್ತು ಅಂಥ ಇತರ ವಿಷಯಗಳಲ್ಲಿ ಪದವಿ, ಸ್ನಾತಕೋತ್ತರ, ಡಾಕ್ಟೊರೇಟ್ ಪದವಿಯ (doctoral) ಮತ್ತು ಡಾಕ್ಟೊರೇಟ್ ಪದವಿ ನಂತರದ ವ್ಯಾಸಂಗ ವಿಷಯಗಳ ಕೋರ್ಸುಗಳವರೆಗೆ ಮತ್ತು ಅವುಗಳನ್ನು ಒಳಗೊಂಡಂತೆ ವಿಶ್ವವಿದ್ಯಾಲಯದ ಶಿಕ್ಷಣದ ಸುಧಾರಣೆಯನ್ನು ಬೆಂಬಲಿಸುವುದು, ಉತ್ತೇಜಿಸುವುದು ಮತ್ತು ಕೈಗೆತ್ತಿಕೊಳ್ಳುವುದು;

(ii) ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ವಿಶ್ವವಿದ್ಯಾಲಯದ ಗುಣಮಟ್ಟಗಳಿಗನುಸಾರವಾಗಿ ಶೈಕ್ಷಣಿಕ ಬದಲಾವಣೆ ಮತ್ತು ಸಾಮಾಜಿಕ ಹಾಗೂ ಮಾನವಾಭಿವೃದ್ಧಿ ಬಗ್ಗೆ ಅರಿವನ್ನುಂಟು ಮಾಡಲು ಮತ್ತು ಆ ಬಗ್ಗೆ ಕೊಡುಗೆ ನೀಡಲು ಭಾರತದಲ್ಲಿನ ವಿವಿಧ ಸ್ಥಳಗಳಲ್ಲಿ ಕ್ಯಾಂಪಸ್ಸುಗಳನ್ನು, ಪ್ರಾದೇಶಿಕ ಕೇಂದ್ರಗಳನ್ನು ಸ್ಥಾಪಿಸುವುದು ಮತ್ತು ಅಧ್ಯಯನ ಕೇಂದ್ರಗಳು, ಸಂಯೋಜಿತ ಕಾಲೇಜುಗಳನ್ನು ಹೊಂದುವುದು;

(iii) ಮೌಲ್ಯಮಾಪನದ ವಿವಿಧ ಆಧುನಿಕ ವಿಧಾನಗಳ ಮೂಲಕ ಮಾಡಿದ ಮೌಲ್ಯಮಾಪನಕ್ಕೆ ಅನುಸಾರವಾಗಿ ಶಿಕ್ಷಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದುದರ ಆಧಾರದ ಮೇಲೆ ನೀಡಲು ಪದವಿಗಳನ್ನು, ಡಿಪ್ಲೋಮೋಗಳನ್ನು, ಪ್ರಮಾಣಪತ್ರಗಳನ್ನು ಮತ್ತು ಯಶೋಪತ್ರ ಪ್ರದಾನದಂಥ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(iv) ವಿದ್ಯಾರ್ಥಿಗಳಿಗೆ, ಬೋಧಕ ವೃಂದದ (ಫ್ಯಾಕಲ್ಟಿ) ಸದಸ್ಯರಿಗೆ ಮತ್ತು ಇತರರಿಗೆ ನಿರ್ದಿಷ್ಟ ಶೈಕ್ಷಣಿಕ ಮತ್ತು ಸಂಶೋಧನಾ ಕಾರ್ಯಕ್ರಮಗಳನ್ನು, ತರಬೇತಿ ಕಾರ್ಯಕ್ರಮಗಳನ್ನು ಮತ್ತು ವಿನಿಮಯ ಕಾರ್ಯಕ್ರಮಗಳನ್ನು ವಿನ್ಯಾಸಗೊಳಿಸುವುದಕ್ಕಾಗಿ ಯೋಜನೆಯನ್ನು ರೂಪಿಸುವುದಕ್ಕಾಗಿ, ಅಭಿವೃದ್ಧಿಪಡಿಸುವುದಕ್ಕಾಗಿ ಮತ್ತು ಏರ್ಪಡಿಸುವುದಕ್ಕಾಗಿ, ಇತರ ಯಾವುದೇ ವಿಶ್ವವಿದ್ಯಾಲಯಗಳು, ಸಂಶೋಧನಾ ಸಂಸ್ಥೆಗಳು, ಲಾಭರಹಿತ ಸಂಸ್ಥೆಗಳು, ಕೈಗಾರಿಕಾ ಸಂಸ್ಥೆಗಳು, ವೃತ್ತಿಪರ ಸಂಸ್ಥೆಗಳು ಅಥವಾ ಇತರ ಸಂಸ್ಥೆಗಳೊಂದಿಗೆ ಸಹಯೋಗವನ್ನು ಹೊಂದುವುದು;

(v) ರಾಜ್ಯ ಸರ್ಕಾರದ ಪೂರ್ವಾನುಮತಿಯೊಡನೆ ವಿಶ್ವಾದ್ಯಂತ ಇರುವ ಉತ್ತಮ ಗುಣಮಟ್ಟದ ಇತರ ಯಾವುವೇ ವಿಶ್ವವಿದ್ಯಾಲಯಗಳೊಂದಿಗೆ ಸಹಭಾಗಿಗಳಾಗಿ ವಿಶ್ವವಿದ್ಯಾಲಯದ ಬೋಧಕ ವೃಂದ (ಫ್ಯಾಕಲ್ಟಿ) ಮತ್ತು ಸಂಶೋಧಕರ ಅಭಿವೃದ್ಧಿ ಮತ್ತು ತರಬೇತಿಗಾಗಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು;

(vi) ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಡನೆ, ಯಾವುದೇ ಸಂಸ್ಥೆಯೊಂದಿಗೆ ಸಹಯೋಗ ಹೊಂದಿ ಸಂಶೋಧನೆಯನ್ನು ಮತ್ತು ಹೊಸತನವನ್ನು ಬೆಳಕಿಗೆ ತರುವುದು;

(vii) ತಾನು ಸೂಕ್ತವೆಂದು ಭಾವಿಸಬಹುದಾದಂತೆ, ಕಲಿಕೆಯ ಅಂಥ ಶಾಖೆಗಳಲ್ಲಿ ಬೋಧನಾ ಮತ್ತು ಸಂಶೋಧನಾ ಸೌಲಭ್ಯಗಳನ್ನು ಒದಗಿಸಿ ಜ್ಞಾನ ಪ್ರಸಾರ ಮಾಡುವುದು ಮತ್ತು ಅದನ್ನು ಮುಂದುವರೆಸುವುದು ಹಾಗೂ ವಿಶೇಷವಾಗಿ ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯಕ್ರಮದಲ್ಲಿ ಮಾನವಿಕ ಮತ್ತು ವಿಜ್ಞಾನ ವಿಷಯಗಳಲ್ಲಿ ಸಮಗ್ರ ವ್ಯಾಸಂಗ ವಿಷಯಗಳಿಗಾಗಿ ವಿಶೇಷ ಉಪಬಂಧ ಕಲ್ಪಿಸುವುದು ಮತ್ತು ವಿಶ್ವವಿದ್ಯಾಲಯದಲ್ಲಿ ಅಂತರವಿದ್ಯಾವಿಷಯಗಳ ಅಧ್ಯಯನ ಮತ್ತು ಸಂಶೋಧನೆಗೆ ಉತ್ತೇಜನ ನೀಡುವುದಕ್ಕಾಗಿ ಸೂಕ್ತ ಕ್ರಮ ಕೈಗೊಳ್ಳುವುದು;

(viii) ಉನ್ನತ ಕಲಿಕೆಗೆ ಪ್ರವೇಶಾವಕಾಶಗಳನ್ನು ಮತ್ತು ನ್ಯಾಯ ನೀತಿಗೆ ಉತ್ತೇಜನ ನೀಡುವ ದೃಷ್ಟಿಯಿಂದ, ಕಲಿಕೆಯ ವಿಧಾನಗಳು ಮತ್ತು ಸ್ಥಳಗಳು, ವ್ಯಾಸಂಗ ಕ್ರಮಗಳ ಸಂಯೋಜನೆ, ದಾಖಲಾತಿಗಾಗಿ ಅರ್ಹತೆ, ಪ್ರವೇಶದ ವಯಸ್ಸು, ಪರೀಕ್ಷೆಯನ್ನು ನಡೆಸುವುದು ಮತ್ತು ಕಾರ್ಯಕ್ರಮಗಳ ನಿರ್ವಹಣೆಗೆ ಸಂಬಂಧಿಸಿದಂತೆ ನಮ್ಯವಾದ (ಫ್ಲೆಕ್ಸಿಬಲ್) ಮತ್ತು ಮುಕ್ತವಾದ, ವಿಶ್ವವಿದ್ಯಾಲಯ ಮಟ್ಟದ ಶಿಕ್ಷಣದ ಅನ್ವೇಷಣಾ ಪದ್ಧತಿಯನ್ನು ಅಳವಡಿಸುವುದು ಹಾಗೂ ಜ್ಞಾನದ ಹೊಸ ಕ್ಷೇತ್ರಗಳಲ್ಲಿ ಉತ್ಕೃಷ್ಟತೆಗೆ ಪ್ರೋತ್ಸಾಹಿಸುವುದು, ಶೈಕ್ಷಣಿಕ ಮತ್ತು ಸಮನ್ವಯ ಕಲಿಕೆ, ಇವೆರಡಕ್ಕೂ ಸಮನಾದ ಪ್ರಾಮುಖ್ಯತೆಯನ್ನು ನೀಡುವುದು;

(ix) ತನ್ನ ಕಾರ್ಯನೀತಿಗಳು ಮತ್ತು ಕಾರ್ಯಕ್ರಮಗಳ ಮೂಲಕ ರಾಷ್ಟ್ರೀಯ ಸಮಗ್ರತೆ ಮತ್ತು ಮಾನವ ವ್ಯಕ್ತಿತ್ವದ ಸಮಗ್ರ ವಿಕಾಸಕ್ಕೆ ಪ್ರೋತ್ಸಾಹಿಸುವುದು.

**8. ವಿಶ್ವವಿದ್ಯಾಲಯದ ಅಧಿಕಾರಗಳು.–** ವಿಶ್ವವಿದ್ಯಾಲಯವು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗೆ ಅನುಸಾರವಾಗಿ ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿರ್ಧರಿಸಬಹುದಾದಂತೆ ಕ್ಯಾಂಪಸ್ಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸುವುದು;

(ii) ವಿಶ್ವವಿದ್ಯಾಲಯದ ಉದ್ದೇಶವನ್ನು ಕಾರ್ಯರೂಪಕ್ಕೆ ತರುವಲ್ಲಿ ಅಗತ್ಯವಾಗಬಹುದಾದ ಅಥವಾ ಕಾರ್ಯಸಾಧ್ಯವಾಗಬಹುದಾದ ಎಲ್ಲಾ ಅಂಥ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು;

(iii) ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಮತ್ತು ಷರತ್ತುಗಳಿಗೊಳಪಟ್ಟು ಪದವಿಗಳು ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರದಾನಮಾಡುವುದು;

(iv) ಪರಿನಿಯಮಗಳನ್ವಯ ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿ ವೇತನಗಳು ಮತ್ತು ಬಹುಮಾನಗಳು, ಅವಾರ್ಡುಗಳು, ಪಾರಿತೋಷಕಗಳು ಇತ್ಯಾದಿಗಳನ್ನು ಸ್ಥಾಪಿಸುವುದು ಮತ್ತು ನೀಡುವುದು;

(v) ಸಂದರ್ಭಾನುಸಾರ ಪರಿನಿಯಮಗಳಲ್ಲಿ ಅಥವಾ ನಿಯಮಗಳಲ್ಲಿ ನಿಗದಿಪಡಿಸಬಹುದಾದ ಅಂಥ ಶುಲ್ಕಗಳು, ಬಿಲ್ಲುಗಳು, ಖರೀದಿ ಪಟ್ಟಿಗಳನ್ನು ಕೇಳಿಪಡೆದುಕೊಳ್ಳುವುದು ಮತ್ತು ಸ್ವೀಕರಿಸುವುದು ಹಾಗೂ ಚಾರ್ಜುಗಳನ್ನು ವಸೂಲು ಮಾಡುವುದು;

(vi) ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಪಠ್ಯೇತರ ಚಟುವಟಿಕೆಗಳಿಗೆ ಅವಕಾಶಗಳನ್ನು ಕಲ್ಪಿಸುವುದು;

(vii) ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಕ್ಯಾಂಪಸುಗಳ, ಪ್ರಾದೇಶಿಕ ಕೇಂದ್ರಗಳ, ಅಧ್ಯಯನ ಕೇಂದ್ರಗಳ ಫ್ಯಾಕಲ್ಟಿ, ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವುದು;

(viii) ವಿಶ್ವವಿದ್ಯಾಲಯದ ಅಥವಾ ಒಂದು ಘಟಕ ಕಾಲೇಜಿನ ಅಥವಾ ಕ್ಯಾಂಪಸ್ಸಿನ, ಪ್ರಾದೇಶಿಕ ಕೇಂದ್ರದ, ಅಧ್ಯಯನ ಕೇಂದ್ರದ ಉದ್ದೇಶಕ್ಕಾಗಿ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದಿರುವ. ಯಾವುದೇ ರೀತಿಯ ಸ್ವಯಂ ದೇಣಿಗೆಗಳು ಮತ್ತು ಕೊಡುಗೆಗಳನ್ನು ಸ್ವೀಕರಿಸುವುದು ಮತ್ತು ನ್ಯಾಸ ಮತ್ತು ದತ್ತಿ ಸ್ವತ್ತುಗಳೂ ಸೇರಿದಂತೆ, ಯಾವುದೇ ಚರ ಅಥವಾ ಸ್ಥಿರ ಸ್ವತ್ತನ್ನು ಅರ್ಜಿಸುವುದು, ಹೊಂದಿರುವುದು, ನಿರ್ವಹಿಸುವುದು, ನಡೆಸುವುದು ಮತ್ತು ಹಸ್ತಾಂತರ ಮಾಡುವುದು;

(ix) ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸಿಕೊಂಡು ಬರುವುದು ಹಾಗೂ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ ವಿದ್ಯಾರ್ಥಿಗಳಿಗೆ ವಸತಿ ಸ್ಥಳಗಳಾಗಿ ಮಾನ್ಯತೆ ನೀಡುವುದು;

(x) ವಸತಿಯ ಮೇಲ್ವಿಚಾರಣೆ ಮಾಡುವುದು ಮತ್ತು ನಿಯಂತ್ರಣ ಮಾಡುವುದು ಹಾಗೂ ವಿದ್ಯಾರ್ಥಿಗಳು ಮತ್ತು ಎಲ್ಲಾ ಪ್ರವರ್ಗಗಳ ಸಿಬ್ಬಂದಿಗಳಲ್ಲಿ ಶಿಸ್ತು ನಿಯಂತ್ರಣ ಮಾಡುವುದು ಮತ್ತು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ನಡತೆ ಸಂಹಿತೆಯನ್ನು ರೂಪಿಸುವುದೂ ಒಳಗೊಂಡಂತೆ, ಅಂಥ ಸಿಬ್ಬಂದಿಗಳ ಸೇವಾಷರತ್ತುಗಳನ್ನು ನಿರೂಪಿಸುವುದು;

(xi) ಶೈಕ್ಷಣಿಕ, ಆಡಳಿತಾತ್ಮಕ ಮತ್ತು ಬೆಂಬಲ ಸಿಬ್ಬಂದಿಯ ಹುದ್ದೆಗಳನ್ನು ಮತ್ತು ಇತರ ಅವಶ್ಯ ಹುದ್ದೆಗಳನ್ನು ಸೃಜಿಸುವುದು;

(xii) ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ಉದ್ದೇಶಗಳಿಗಾಗಿ ಇತರ ವಿಶ್ವವಿದ್ಯಾಲಯಗಳೊಡನೆ ಸಹಕರಿಸುವುದು ಮತ್ತು ಸಹಯೋಗ ಹೊಂದುವುದು;

(xiii) ಶಿಕ್ಷಕರಿಗೆ, ಪಾಠಗಳನ್ನು ರಚಿಸುವವರಿಗೆ, ಮೌಲ್ಯಮಾಪಕರಿಗೆ ಮತ್ತಿತರ ಶೈಕ್ಷಣಿಕ ಸಿಬ್ಬಂದಿಗೆ ಪುನರ್ಮನನ ವ್ಯಾಸಂಗಕ್ರಮಗಳು, ಅಭಿಮುಖಿ ವ್ಯಾಸಂಗ ಕ್ರಮಗಳು, ಕಾರ್ಯಾಗಾರಗಳು, ವಿಚಾರಗೋಷ್ಠಿಗಳು ಮತ್ತಿತರ ಕಾರ್ಯಕ್ರಮಗಳನ್ನು ಏರ್ಪಡಿಸುವುದು ಮತ್ತು ನಡೆಸುವುದು;

(xiv) ಶೈಕ್ಷಣಿಕ ಪರಿಷತ್ತಿನ ಅನುಮೋದನೆಯೊಂದಿಗೆ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಪ್ರಾದೇಶಿಕ ಕೇಂದ್ರಗಳಿಗೆ, ಅಧ್ಯಯನ ಕೇಂದ್ರಗಳಿಗೆ ಪ್ರವೇಶಕ್ಕೆ ಮಾನಕ ಗುಣಮಟ್ಟಗಳನ್ನು ನಿರ್ಧರಿಸುವುದು;

(xv) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಕಾರ್ಯರೂಪಕ್ಕೆ ತರಲು ಅವಶ್ಯವಾಗಬಹುದಾದಂಥ ಇತರ ಎಲ್ಲಾ ಕ್ರಮಗಳನ್ನು ಅಥವಾ ಕಾರ್ಯಗಳನ್ನು, ಅವು ಮೇಲೆ ಹೇಳಿದ ಅಧಿಕಾರಗಳಿಗೆ ಪ್ರಾಸಂಗಿಕವಾಗಿರಲಿ ಅಥವಾ ಇಲ್ಲದಿರಲಿ, ಕೈಗೊಳ್ಳುವುದು;

(xvi) ಪರೀಕ್ಷೆಗಳ ಆಧಾರದ ಮೇಲೆ ಅಥವಾ ಸರ್ಕಾರದಿಂದ ಅನುಮೋದಿತವಾದ ಇತರ ಯಾವುದೇ ಮೌಲ್ಯಮಾಪನ ವಿಧಾನದ ಆಧಾರದ ಮೇಲೆ ನೀಡಲು ಪದವಿಗಳು, ಡಿಪ್ಲೋಮಾಗಳು, ಪ್ರಮಾಣ ಪತ್ರಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಸ್ಥಾಪಿಸುವುದು;

(xvii) ಫಿಲಂಗಳು, ಕ್ಯಾಸೆಟ್‌ಗಳು, ಧ್ವನಿಸುರುಳಿಗಳು, ದೃಶ್ಯಸುರುಳಿಗಳು, ಸಿ.ಡಿ., ವಿ.ಸಿ.ಡಿ. ಮತ್ತು ಇತರ ತಂತ್ರಾಂಶಗಳು ಸೇರಿದಂತೆ ಬೋಧಕ ಸಾಮಗ್ರಿಗಳನ್ನು ತಯಾರಿಸುವುದಕ್ಕಾಗಿ ಅವಕಾಶ ಕಲ್ಪಿಸುವುದು;

(xviii) ಪ್ರಬಂಧಕ ಮಂಡಳಿಯ ಅನುಮೋದನೆಯೊಡನೆ ವಿಶ್ವವಿದ್ಯಾಲಯದ ಉದ್ದೇಶಗಳಿಗಾಗಿ ವಿಶ್ವವಿದ್ಯಾಲಯದ ಸ್ವತ್ತುಗಳನ್ನು ಭದ್ರತೆಯಾಗಿ ನೀಡಿ ಅಥವಾ ನೀಡದೆ ಹಣವನ್ನು ಪಡೆಯುವುದು, ಸಂಗ್ರಹಿಸುವುದು, ಚಂದಾದಾರರಾಗುವುದು ಮತ್ತು ಸಾಲ ಪಡೆಯುವುದು;

(xix) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುದೇ ಇತರ ಶೈಕ್ಷಣಿಕ ಸಂಸ್ಥೆಗಳ ಆಡಳಿತವನ್ನು ವಶಪಡಿಸಿಕೊಳ್ಳುವುದು, ವಹಿಸಿಕೊಳ್ಳುವುದು ಮತ್ತು ನಡೆಸುವುದು;

(xx) ವ್ಯವಸ್ಥಾಪನಾ ಮಂಡಳಿಯ ಪೂರ್ವಾನುಮೋದನೆಯೊಂದಿಗೆ ಸ್ವತ್ತುಗಳನ್ನು ಅರ್ಜಿಸುವುದು;

(xxi) ವಿಶ್ವವಿದ್ಯಾಲಯದ ಮೇಲಿನ ಉದ್ದೇಶಗಳಿಗೆ ಸಂಬಂಧಿಸಿದ ಅಥವಾ ಪ್ರಾಸಂಗಿಕವಾದ ಯಾವುದೇ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು.

**9. ವಿಶ್ವವಿದ್ಯಾಲಯವು ಎಲ್ಲಾ ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲರಿಗೂ ಮುಕ್ತವಾಗಿರತಕ್ಕದ್ದು.-** ವಿಶ್ವವಿದ್ಯಾಲಯದ ಪ್ರವೇಶಗಳು ಜಾತಿ, ವರ್ಗ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲಾ ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು. ಎಲ್ಲಾ ಪ್ರವೇಶಗಳನ್ನು ಅರ್ಹತಾ ಪರೀಕ್ಷೆಗಳಲ್ಲಿನ ಅರ್ಹತೆಯ ಆಧಾರದ ಮೇಲೆ ಮಾಡತಕ್ಕದ್ದು:

ಪರಂತು, ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳ ಪ್ರವೇಶದಲ್ಲಿ ಶೇಕಡಾ ನಲವತ್ತರಷ್ಟನ್ನು ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ಮೀಸಲಿಡತಕ್ಕದ್ದು ಮತ್ತು ಪ್ರವೇಶಗಳನ್ನು ರಾಜ್ಯ ಸರ್ಕಾರವು ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ

ಪ್ರವೇಶ ಪರೀಕ್ಷೆಯ ಮೂಲಕ ಮಾಡತಕ್ಕದ್ದು ಮತ್ತು ಸೀಟುಗಳನ್ನು ಅರ್ಹತೆ ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ರೂಪಿಸುವ ಮೀಸಲಾತಿ ನೀತಿಗೆ ಅನುಸಾರವಾಗಿ ಹಂಚಿಕೆ ಮಾಡತಕ್ಕದ್ದು:

ಮತ್ತು ಪರಂತು, ಯಾವುದೇ ಕೋರ್ಸಿನಲ್ಲಿ ಹತ್ತಕ್ಕಿಂತ ಕಡಿಮೆ ಸೀಟುಗಳು ಇರುವಲ್ಲಿ, ಸ್ನಾತಕೋತ್ತರ, ಇಂಥ ಕೋರ್ಸುಗಳನ್ನು ಒಟ್ಟಿಗೆ ಒಂದುಗೂಡಿಸುವ ಮೂಲಕ ಮೀಸಲಿಡತಕ್ಕದ್ದು ಮತ್ತು ಯಾವುದೇ ಕೋರ್ಸಿನಲ್ಲಿ ಮೂರು ಸೀಟುಗಳಿಗಿಂತ ಕಡಿಮೆ ಇರುವಲ್ಲಿ, ಅವುಗಳನ್ನು ಸುತ್ತು ಸರದಿಯಲ್ಲಿ ಮೀಸಲಿಡತಕ್ಕದ್ದು.

**10. ರಾಷ್ಟ್ರೀಯ ಅಧಿಮಾನ್ಯತೆ.–** ವಿಶ್ವವಿದ್ಯಾಲಯವು ಪ್ರಾರಂಭವಾದ ತರುವಾಯ ಆದಷ್ಟು ಬೇಗನೆ ಸಂಬಂಧಪಟ್ಟ ಶಾಸನಾತ್ಮಕ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳಿಂದ ಅಧಿಮಾನ್ಯತೆಯನ್ನು ಕೋರತಕ್ಕದ್ದು ಮತ್ತು ಖಾಸಗಿ ವಿಶ್ವವಿದ್ಯಾಲಯಗಳು ನಡೆಸುವ ಎಲ್ಲಾ ವ್ಯಾಸಂಗ ಕ್ರಮಗಳು ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ವಿನಿಯಮಗಳಿಗೆ ಅನುಸಾರವಾಗಿ ಇರತಕ್ಕದ್ದು.

**11. ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು.–** ಪ್ರಾಯೋಜಕ ಸಂಸ್ಥೆಯು ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದಂತೆ ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಇವುಗಳಲ್ಲಿ ಪ್ರತಿಯೊಂದನ್ನು ಪ್ರಾಯೋಜಕ ಸಂಸ್ಥೆಯು ತನ್ನ ವಿವೇಚನಾನುಸಾರ ಚಲಾಯಿಸಬಹುದು, ಎಂದರೆ:–

(i) ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಪುನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(ii) ವಿಶ್ವವಿದ್ಯಾಲಯದ ಪ್ರಥಮ ಪ್ರಬಂಧಕ ಮಂಡಳಿಯನ್ನು ರಚಿಸುವುದು;

(iii) ಪ್ರಬಂಧಕ ಮಂಡಳಿಯ ಅಧ್ಯಕ್ಷರನ್ನು ನಾಮನಿರ್ದೇಶಿಸುವುದು;

(iv) ಪ್ರಬಂಧಕ ಮಂಡಳಿಯ ಸದಸ್ಯರಾಗಿ ಮೂರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(v) ವ್ಯವಸ್ಥಾಪನಾ ಮಂಡಳಿಯ ಸದಸ್ಯರಾಗಿ ಇಬ್ಬರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(vi) ವಿಶ್ವವಿದ್ಯಾಲಯದ ದತ್ತಿ ನಿಧಿಗೆ ದೇಣಿಗೆ ನೀಡಲು ನಿಧಿ ಮೂಲಗಳನ್ನು ನಿರ್ಧರಿಸುವುದು;

(vii) ವಿಶ್ವವಿದ್ಯಾಲಯದ ಹಣದ ವಿನಿಯೋಗ ಮತ್ತು ವೆಚ್ಚ ಮಾಡುವುದನ್ನು ನಿರ್ಧರಿಸುವುದು;

(viii) ಈ ಅಧಿನಿಯಮದಲ್ಲಿ ಉಪಬಂಧಿಸಿರುವ ವಿಧಾನದಲ್ಲಿ ಪ್ರಬಂಧಕ ಮಂಡಳಿಯ ಸಭೆಯಲ್ಲಿ ಯಾವುವೇ ವಿವಾದಗಳನ್ನು ಬಗೆಹರಿಸುವುದು.

## ಅಧ್ಯಾಯ – III

## ವಿಶ್ವವಿದ್ಯಾಲಯದ ಅಧಿಕಾರಿಗಳು

**12. ವಿಶ್ವವಿದ್ಯಾಲಯದ ಅಧಿಕಾರಿಗಳು.–** ಈ ಮುಂದಿನವರು ವಿಶ್ವವಿದ್ಯಾಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:–

(i) ಸಂದರ್ಶಕರು;

(ii) ಸಹ–ಸಂದರ್ಶಕರು;

(iii) ಕುಲಾಧಿಪತಿಗಳು;

(iv) ಕುಲಪತಿಗಳು;

(v) ಸಹಕುಲಪತಿಗಳು;

(vi) ಕುಲಸಚಿವರು;

(vii) ಹಣಕಾಸು ಅಧಿಕಾರಿ; ಮತ್ತು

(viii) ಪರಿನಿಯಮಗಳ ಮೂಲಕ ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಘೋಷಿಸಬಹುದಾದಂಥ ಇತರ ಅಧಿಕಾರಿಗಳು.

**13. ಸಂದರ್ಶಕರು.–** (1) ಕರ್ನಾಟಕದ ಘನತೆವೆತ್ತ ರಾಜ್ಯಪಾಲರು ವಿಶ್ವವಿದ್ಯಾಲಯದ ಸಂದರ್ಶಕರಾಗಿರತಕ್ಕದ್ದು ಮತ್ತು ಸಂದರ್ಶಕರು ವಿಶ್ವವಿದ್ಯಾಲಯದ ಕಾರ್ಯನಿರ್ವಹಣೆಯ ಸುಧಾರಣೆಗಾಗಿ ಸಲಹೆಗಳನ್ನು ನೀಡಬಹುದು.

(2) ಸಂದರ್ಶಕರು, ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಸಂದರ್ಶಕರು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ವ್ಯವಹಾರಗಳಿಗೆ ಸಂಬಂಧಿಸಿದ ಯಾವುದೇ ಕಾಗದ ಪತ್ರ ಅಥವಾ ಮಾಹಿತಿಯನ್ನು ಕೇಳುವುದು;

(ii) ಸಂದರ್ಶಕರು ಸ್ವೀಕರಿಸಿದ ಮಾಹಿತಿಯ ಆಧಾರದ ಮೇಲೆ ಮತ್ತು ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ಮಾಡಿದ ಯಾವುದೇ ಆದೇಶ, ನಡವಳಿಗಳು ಅಥವಾ ಕೈಗೊಂಡ ತೀರ್ಮಾನವು ಅಧಿನಿಯಮಕ್ಕೆ, ವಿನಿಯಮಗಳಿಗೆ ಅಥವಾ ನಿಯಮಗಳಿಗೆ ಅನುಸಾರವಾಗಿಲ್ಲವೆಂದು ಅವರು ಮನಗಂಡರೆ, ವಿಶ್ವವಿದ್ಯಾಯಲದ ಹಿತದೃಷ್ಟಿಯಿಂದ ತಾವು ಸೂಕ್ತವೆಂದು ಭಾವಿಸಬಹುದಾದ ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ಹಾಗೆ ನೀಡಲಾದ ನಿರ್ದೇಶನಗಳನ್ನು ಸಂಬಂಧಪಟ್ಟ ಎಲ್ಲರೂ ಪಾಲಿಸತಕ್ಕದ್ದು.

**14. ಸಹ-ಸಂದರ್ಶಕರು.-** (1) ಕರ್ನಾಟಕ ಸರ್ಕಾರದ ಮಾನ್ಯ ಉನ್ನತ ಶಿಕ್ಷಣ ಸಚಿವರು ವಿಶ್ವವಿದ್ಯಾಲಯದ ಸಹ-ಸಂದರ್ಶಕರಾಗಿರತಕ್ಕದ್ದು.

(2) ಸಂದರ್ಶಕರ ಅನುಪಸ್ಥಿತಿಯಲ್ಲಿ ಸಹ-ಸಂದರ್ಶಕರು ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**15. ಕುಲಾಧಿಪತಿಗಳು.-** (1) ಕುಲಾಧಿಪತಿಯವರನ್ನು ಪ್ರಾಯೋಜಕ ಸಂಸ್ಥೆಯು ನೇಮಿಸತಕ್ಕದ್ದು.

(2) ಪ್ರಾಯೋಜಕ ಸಂಸ್ಥೆಯ ಸಂಸ್ಥಾಪಿತ ನ್ಯಾಸಧಾರಿಯು ಮೊದಲನೇ ಕುಲಾಧಿಪತಿಗಳಾಗಿರತಕ್ಕದ್ದು, ಅವರು ತಮ್ಮ ಜೀವನಪರ್ಯಂತ ಅಥವಾ ಅವರು ತಮ್ಮ ಪದವನ್ನು ಬಿಟ್ಟುಕೊಡುವವರೆಗೆ ಕುಲಾಧಿಪತಿಗಳಾಗಿ ಪದಧಾರಣ ಮಾಡಿರತಕ್ಕದ್ದು.

(3) ತದನಂತರದ ಕುಲಾಧಿಪತಿಗಳು, ಅಂಥ ನೇಮಕಾತಿಯನ್ನು ಪರಿಗಣಿಸುವ ಸಂದರ್ಭದಲ್ಲಿ ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ, ಪ್ರಾಯೋಜಕ ಸಂಸ್ಥೆಯ ನ್ಯಾಸಧಾರಿಯಾಗಿರತಕ್ಕದ್ದು ಅಥವಾ ಶಿಕ್ಷಣ, ವಿಜ್ಞಾನ, ಸಂಸ್ಕೃತಿ ಅಥವಾ ಸಾರ್ವಜನಿಕ ಜೀವನ ಕ್ಷೇತ್ರಗಳಲ್ಲಿ ರಾಷ್ಟ್ರೀಯ ಮಟ್ಟದ ಛಾಪನ್ನು ಪಡೆದಿರುವ ಅಂಥ ಇತರ ವ್ಯಕ್ತಿಯಾಗಿರತಕ್ಕದ್ದು.

(4) ಹಾಗೆ ನೇಮಕಗೊಂಡ ತದನಂತರದ ಕುಲಾಧಿಪತಿಗಳು ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ಪದಧಾರಣ ಮಾಡತಕ್ಕದ್ದು.

(5) ಕುಲಾಧಿಪತಿಗಳು ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳ ಅಡಿಯಲ್ಲಿ ಅವರಿಗೆ ಪ್ರದಾನ ಮಾಡಬಹುದಾದಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು, ಅವುಗಳಲ್ಲಿ ಈ ಮುಂದಿನ ಅಧಿಕಾರಗಳು ಒಳಗೊಂಡಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುವುದು;

(ii) ಸಂದರ್ಶಕರ ಮತ್ತು ಸಹ-ಸಂದರ್ಶಕರಿಬ್ಬರ ಗೈರುಹಾಜರಿಯಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಘಟಿಕೋತ್ಸವಗಳಲ್ಲಿ ಅಧ್ಯಕ್ಷತೆಯನ್ನು ವಹಿಸುವುದು;

(iii) ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿಯ ಸದಸ್ಯ ಮತ್ತು ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವುದು ಅಲ್ಲದೆ ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಹಾಜರಾಗುವುದು;

(iv) ಈ ಅಧಿನಿಯಮ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಅನುಸಾರವಾಗಿ ಕುಲಪತಿಗಳನ್ನು ನೇಮಿಸುವುದು ಅಥವಾ ಪುನರ್ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(v) ಈ ಅಧಿನಿಯಮದ 16ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ನಾಮನಿರ್ದೇಶಕ ಸಮಿತಿಯ ಸದಸ್ಯರಾಗಿ ಒಬ್ಬ ವ್ಯಕ್ತಿಯನ್ನು ನಾಮನಿರ್ದೇಶನ ಮಾಡುವುದು;

(vi) ಸಹಕುಲಪತಿಗಳು, ಡೀನ್, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿಗಳ ನೇಮಕಾತಿಯನ್ನು ಅನುಮೋದಿಸುವುದು;

(vii) ಪ್ರಬಂಧಕ ಮಂಡಳಿಯ ಸದಸ್ಯರನ್ನಾಗಿ ಇಬ್ಬರು ಶಿಕ್ಷಣ ತಜ್ಞರನ್ನು ನಾಮನಿರ್ದೇಶಿಸುವುದು;

(viii) ಮೊದಲ ಸಹಕುಲಪತಿಗಳು ಮತ್ತು ಹಣಕಾಸು ಅಧಿಕಾರಿಗಳನ್ನು ನೇಮಿಸುವುದು;

(ix) ಮೊದಲ ವ್ಯವಸ್ಥಾಪನಾ ಮಂಡಳಿ, ಹಣಕಾಸು ಸಮಿತಿ, ಸಂಶೋಧನಾ ಪರಿಷತ್ತು ಹಾಗೂ ಶೈಕ್ಷಣಿಕ ಪರಿಷತ್ತುಗಳನ್ನು ರಚಿಸುವುದು;

(x) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ ಕಾರ್ಯಸೂಚಿ ವಿಷಯಗಳನ್ನು ಪೂರ್ವಾನುಮೋದಿಸುವುದು;

(xi) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ (ಪ್ರಬಂಧಕ ಮಂಡಳಿಯ ಸಭೆಯಲ್ಲಿ ಉಂಟಾದ ವಿವಾದಗಳನ್ನು ಹೊರತುಪಡಿಸಿ) ವಿವಾದಗಳನ್ನು ಪರಿಹರಿಸುವುದು.

(6) ಪದಾಧಿಕಾರಿ ಅಥವಾ ಪದಾಧಿಕಾರಿಗಳು ಅಥವಾ ಸಂಸ್ಥೆ ಅಥವಾ ಸಂಸ್ಥೆಗಳು ಮತ್ತು ವಿಶ್ವವಿದ್ಯಾಲಯದ ಯಾವುದೇ ಇತರ ಪದಾಧಿಕಾರಿ ಅಥವಾ ಸಂಸ್ಥೆಗಳ ನಡುವೆ ವಿವಾದಗಳು ಉಂಟಾದಲ್ಲಿ, ಆ ವಿವಾದವನ್ನು ಕುಲಾಧಿಪತಿಯವರ

ಪರ್ಯಾಲೋಚನೆಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿವಾದದ ಸಂದರ್ಭದಲ್ಲಿ ಕುಲಾಧಿಪತಿಯವರ ತೀರ್ಮಾ[illegible] ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**16. ಕುಲಪತಿಗಳು.–** (1) (2)ನೇ ಉಪಪ್ರಕರಣದ ಉಪಬಂಧಗಳಿಗೆ ಅನುಸಾರವಾಗಿ ಸ್ಥಾಪಿತವಾದ ನಾಮನಿರ್ದೇಶಕ ಸಮಿತಿಯು ಶಿಫಾರಸ್ಸು ಮಾಡಿದ ಮೂರು ವ್ಯಕ್ತಿಗಳ ಪೈಕಿಯಿಂದ ಒಬ್ಬರನ್ನು ಮೂರು ವರ್ಷಗಳ ಅವಧಿಗಾಗಿ ಕುಲಪತಿಗಳನ್ನಾಗಿ, ಪರಿನಿಯಮಗಳಲ್ಲಿ ನಿಯಮಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರು ನೇಮಿಸತಕ್ಕದ್ದು. ಮೂರು ವರ್ಷಗಳ ಅವಧಿಯು ಮುಗಿದ ತರುವಾಯ, ಇದನ್ನು ಮೂರು ವರ್ಷಗಳ ಮತ್ತೊಂದು ಅವಧಿಗೆ ನವೀಕರಿಸಬಹುದು:

ಪರಂತು, ಕುಲಪತಿಯು ತನ್ನ ಪದಾವಧಿ ಮುಗಿದ ನಂತರವೂ, ಹೊಸ ಕುಲಪತಿಗಳು ಸೇರಿಕೊಳ್ಳುವವರೆಗೆ ಪದದಲ್ಲಿ ಮುಂದುವರೆಯತಕ್ಕದ್ದು. ಆದಾಗ್ಯೂ, ಈ ಅವಧಿಯು ಯಾವುದೇ ಸಂದರ್ಭದಲ್ಲೂ ಒಂದು ವರ್ಷವನ್ನು ಮೀರತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಹೇಳಿರುವ ನಾಮನಿರ್ದೇಶಕ ಸಮಿತಿಯಲ್ಲಿ ಈ ಮುಂದಿನ ವ್ಯಕ್ತಿಗಳು ಇರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು ನಾಮನಿರ್ದೇಶಿಸಿದ ಒಬ್ಬ ವ್ಯಕ್ತಿ;

(ii) ಪ್ರಬಂಧಕ ಮಂಡಳಿಯ ಇಬ್ಬರು ನಾಮ ನಿರ್ದೇಶಿತರು, ಇವರಲ್ಲಿ ಒಬ್ಬರನ್ನು ಪ್ರಬಂಧಕ ಮಂಡಳಿಯು ಸಮಿತಿಯ ಸಂಚಾಲಕರೆಂದು ನಾಮನಿರ್ದೇಶಿಸತಕ್ಕದ್ದು.

(3) ನಾಮನಿರ್ದೇಶಕ ಸಮಿತಿಯು, ಅರ್ಹತೆಯ ಆಧಾರದ ಮೇಲೆ ಕುಲಪತಿಯ ಹುದ್ದೆಗೆ ಸೂಕ್ತವಾದ ಮೂರು ವ್ಯಕ್ತಿಗಳ ಹೆಸರನ್ನು ಶಿಫಾರಸ್ಸು ಮಾಡತಕ್ಕದ್ದು ಮತ್ತು ಅದನ್ನು ಪ್ರತಿಯೊಬ್ಬ ವ್ಯಕ್ತಿಯ ವಿದ್ಯಾರ್ಹತೆ ಮತ್ತಿತರ ವಿಶಿಷ್ಟ ಪ್ರಶಸ್ತಿಗಳನ್ನು ತಿಳಿಸುವ ಒಂದು ಸಂಕ್ಷಿಪ್ತ ವರದಿಯೊಂದಿಗೆ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು.

(4) ಕುಲಪತಿಯವರು ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಾಹಕ ಮತ್ತು ಶೈಕ್ಷಣಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣವನ್ನು ಚಲಾಯಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯದ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೊಳಿಸತಕ್ಕದ್ದು:

ಪರಂತು, ಶಿಕ್ಷಕರ ನೇಮಕಾತಿಯನ್ನು ಹೊರತುಪಡಿಸಿ ಕೂಡಲೇ ಕ್ರಮವನ್ನು ಕೈಗೊಳ್ಳಬೇಕಾದ ತುರ್ತು ಸ್ವರೂಪದ ಯಾವುದೇ ಇತರ ವಿಷಯಗಳಲ್ಲಿ ಮತ್ತು ಅದನ್ನು ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ವಿಶ್ವವಿದ್ಯಾಲಯವು ಇದಕ್ಕಾಗಿ ಅಧಿಕೃತಗೊಳಿಸಿದ್ದ ಯಾವೊಬ್ಬ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ಇತರ ಸಂಸ್ಥೆಯು ಕೂಡಲೇ ಕ್ರಮಕೈಗೊಳ್ಳುವುದು ಸಾಧ್ಯವಿರದಿರುವಾಗ ಕುಲಪತಿಯವರು ತಾನು ಸೂಕ್ತವೆಂದು ಭಾವಿಸಬಹುದಾದಂತಹ ಕ್ರಮವನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆದು ಕೈಗೊಳ್ಳತಕ್ಕದ್ದು.

(5) ಕುಲಪತಿಯವರು ಪರಿನಿಯಮಗಳು ಅಥವಾ ನಿಯಮಗಳಲ್ಲಿ ಹೇಳಲಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು:

ಪರಂತು, ಕುಲಪತಿಗಳ ಅಭಿಪ್ರಾಯದಲ್ಲಿ, ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಯಾವುದೇ ನಿರ್ಣಯವು, ಈ ಅಧಿನಿಯಮ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳು, ವಿನಿಯಮಗಳು ಅಥವಾ ನಿಯಮಗಳ ಮೂಲಕ ಪ್ರದತ್ತವಾದ ಅಧಿಕಾರದ ಹೊರಗಿದ್ದರೆ ಅಥವಾ ವಿಶ್ವವಿದ್ಯಾಲಯದ ಹಿತಾಸಕ್ತಿಗೆ ಪ್ರತಿಕೂಲವಾಗಬಹುದಾಗಿದ್ದರೆ, ಅದರ ನಿರ್ಣಯದ ದಿನಾಂಕದಿಂದ ಹದಿನೈದು ದಿನಗಳ ಒಳಗೆ ತನ್ನ ನಿರ್ಣಯವನ್ನು ಪರಿಷ್ಕರಿಸಲು ಸಂಬಂಧಪಟ್ಟ ಪ್ರಾಧಿಕಾರವನ್ನು ಆತನು ಕೋರತಕ್ಕದ್ದು ಮತ್ತು ಪ್ರಾಧಿಕಾರವು ಅಂಥ ನಿರ್ಣಯವನ್ನು ಸಂಪೂರ್ಣವಾಗಿ ಅಥವಾ ಭಾಗಶ:ವಾಗಿ ಪರಿಷ್ಕರಿಸಲು ನಿರಾಕರಿಸಿದ ಸಂದರ್ಭದಲ್ಲಿ ಅಥವಾ ಹದಿನೈದು ದಿನಗಳೊಳಗೆ ಯಾವುದೇ ನಿರ್ಣಯವನ್ನು ತೆಗೆದುಕೊಳ್ಳಲು ವಿಫಲವಾದಲ್ಲಿ, ನಂತರ ಅಂಥ ವಿಷಯವನ್ನು ಕುಲಾಧಿಪತಿಗಳಿಗೆ ಕಳುಹಿಸತಕ್ಕದ್ದು ಮತ್ತು ಈ ಬಗ್ಗೆ ಇವರ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

(6) ಕುಲಪತಿಯವರ ಸೇವೆಗಳನ್ನು ಪ್ರಬಂಧಕ ಮಂಡಳಿಯ ಅನುಮೋದನೆಯೊಂದಿಗೆ ಮತ್ತು ಸಹಜ ನ್ಯಾಯದ ತತ್ವಗಳನ್ನು ಅನುಸರಿಸಿದ ನಂತರ ಹಾಗೂ ಶಿಸ್ತಿನ ಆಧಾರದ ಮೇಲೆ ಅಂತ್ಯಗೊಳಿಸುವ ಸಂದರ್ಭವೂ ಸೇರಿದಂತೆ, ಪ್ರಕರಣದ ಬಗ್ಗೆ ಕುಲಪತಿಯು ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡಿದ ತರುವಾಯ, ಪ್ರಬಂಧಕ ಮಂಡಳಿಯ ಅನುಮೋದನೆಯೊಡನೆ ಕುಲಾಧಿಪತಿಯವರು ಅಂತ್ಯಗೊಳಿಸಬಹುದು.

(7) ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಸಂದರ್ಶಕರು, ಸಹ–ಸಂದರ್ಶಕರು ಮತ್ತು ಕುಲಾಧಿಪತಿಯವರು ಇವರುಗಳ ಗೈರು ಹಾಜರಿಯ ಸಂದರ್ಭದಲ್ಲಿ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**17. ಸಹಕುಲಪತಿಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಮೂರು ಜನರನ್ನು ಮೀರದಂತೆ ಸಹಕುಲಪತಿಗಳನ್ನು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**18. ವ್ಯಾಸಂಗ ವಿಭಾಗಗಳ ಡೀನ್‌ಗಳು:–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಪರಿನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವ್ಯಾಸಂಗ ವಿಭಾಗಗಳ ಡೀನ್‌ಗಳನ್ನು ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**19. ಕುಲಸಚಿವರು.**–(1) ಕುಲಾಧಿಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಸಚಿವರನ್ನು ನೇಮಕ ಮಾಡತಕ್ಕದ್ದು.

(2) ಪರಿನಿಯಮಗಳಲ್ಲಿ ಪರಿಭಾಷಿಸಿರುವಂಥ ಎಲ್ಲಾ ಕರಾರುಗಳನ್ನು ವಿಶ್ವವಿದ್ಯಾಲಯದ ಪರವಾಗಿ ಕುಲಸಚಿವರು ಮಾಡಿಕೊಳ್ಳತಕ್ಕದ್ದು ಮತ್ತು ಅದಕ್ಕೆ ಸಹಿ ಹಾಕತಕ್ಕದ್ದು.

(3) ಕುಲಸಚಿವರು ವಿಶ್ವವಿದ್ಯಾಲಯದ ಪರವಾಗಿ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಪರಿನಿಯಮಗಳ ಮೂಲಕ ಹೇಳಬಹುದಾದಂಥ ಅಥವಾ ಕುಲಾಧಿಪತಿಯವರು ಮತ್ತು ಕುಲಪತಿಯವರು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು ವಿಶ್ವವಿದ್ಯಾಲಯದ ದಾಖಲೆಗಳು ಮತ್ತು ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು, ಕುಲಪತಿಯವರು ಅಥವಾ ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಅಂಥ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿತಕ್ಕದ್ದು.

**20. ಹಣಕಾಸು ಅಧಿಕಾರಿ.**– ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು, ಪರಿನಿಯಮಗಳ ಮೂಲಕ ಪ್ರದತ್ತಗೊಳಿಸಬಹುದಾದ ಅಂಥ ವಿಧಾನದಲ್ಲಿ ಹಣಕಾಸು ಅಧಿಕಾರಿಯನ್ನು ನೇಮಕ ಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**21. ಇತರ ಅಧಿಕಾರಿಗಳು.**– ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ ನೇಮಕಾತಿಯ ವಿಧಾನ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಕರ್ತವ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ – IV

## ವಿಶ್ವವಿದ್ಯಾಲಯದ ಪ್ರಾಧಿಕಾರಗಳು

**22. ವಿಶ್ವವಿದ್ಯಾಲಯದ ಪ್ರಾಧಿಕಾರಗಳು.**– ಈ ಮುಂದಿನವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:–

(i) ಪ್ರಬಂಧಕ ಮಂಡಳಿ;

(ii) ವ್ಯವಸ್ಥಾಪನ ಮಂಡಳಿ;

(iii) ಶೈಕ್ಷಣಿಕ ಪರಿಷತ್ತು;

(iv) ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು;

(v) ಹಣಕಾಸು ಸಮಿತಿ; ಮತ್ತು

(vi) ವಿಶ್ವವಿದ್ಯಾಲಯದ ಪ್ರಾಧಿಕಾರಗಳೆಂದು ಪರಿನಿಯಮಗಳ ಮೂಲಕ ಘೋಷಿಸಬಹುದಾದ ಅಂಥ ಇತರ ಪ್ರಾಧಿಕಾರಗಳು.

**23. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು.**– (1) ಪ್ರಬಂಧಕ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು – ಅಧ್ಯಕ್ಷರು;

(ii) ಕುಲಪತಿಯವರು – ಸದಸ್ಯರು;

(iii) ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(iv) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(v) ರಾಜ್ಯ ಸರ್ಕಾರವು ನಾಮ ನಿರ್ದೇಶನ ಮಾಡಿದ ಆಡಳಿತವನ್ನು ಒಳಗೊಂಡಂತೆ ವ್ಯವಸ್ಥಾಪನೆ, ಹಣಕಾಸು ಅಥವಾ ಯಾವುದೇ ಇತರ ವಿಶೇಷ ಕ್ಷೇತ್ರದಲ್ಲಿನ ಒಬ್ಬರು ತಜ್ಞರು;

(vi) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಇಬ್ಬರು ವ್ಯಕ್ತಿಗಳು ಅವರ ಪೈಕಿ ಒಬ್ಬರು ಮಹಿಳೆಯಾಗಿರತಕ್ಕದ್ದು;

(vii) ಸಹ ಕುಲಪತಿಯವರು ಮತದಾನದ ಹಕ್ಕಿಲ್ಲದ ಸದಸ್ಯರಾಗಿರತಕ್ಕದ್ದು;

(viii) ವಿಶ್ವವಿದ್ಯಾಲಯ ಅನುದಾನ ಆಯೋಗದ ನಾಮನಿರ್ದೇಶಿತ ಒಬ್ಬ ಸುಪ್ರಸಿದ್ಧ ಶಿಕ್ಷಣ ತಜ್ಞರು.

(2) ಕುಲಸಚಿವರು ಮತ್ತು ಸಹ ಕುಲಪತಿಗಳು ಯಾವಾಗಲೂ ಪ್ರಬಂಧಕ ಮಂಡಳಿಯ ಮತದಾನದ ಹಕ್ಕಿರದ ಆಹ್ವಾನಿತರಾಗಿರತಕ್ಕದ್ದು.

(3) ಪ್ರಬಂಧಕ ಮಂಡಳಿಯ ಸದಸ್ಯರ ಪದಾವಧಿ, ಸರ್ಕಾರದಿಂದ ನಾಮನಿರ್ದೇಶಿತರಾದ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ನೇಮಕಾತಿ, ನವೀಕರಣ ಮತ್ತು ತೆಗೆದುಹಾಕುವುದು ಮುಂತಾದವುಗಳು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಾಧಿಪತಿಯವರು ಅಧ್ಯಕ್ಷತೆವಹಿಸತಕ್ಕದ್ದು ಹಾಗೂ ಅವರ ಗೈರು ಹಾಜರಿಯಲ್ಲಿ ಪ್ರಾಯೋಜಿಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಿಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೆ ಇದ್ದಲ್ಲಿ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು.

(5) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಿಗೆ, ಅಂಥ ಸಭೆಯಲ್ಲಿ ಹಾಜರಾಗುವ ಮತ್ತು ಮತದಾನ ನೀಡುವ ಮೂರು ಜನ ಸದಸ್ಯರು ಗಣಪೂರ್ತಿ (ಕೋರಂ) ಆಗಿರತಕ್ಕದ್ದು:

ಪರಂತು, ಪ್ರಬಂಧಕ ಮಂಡಳಿಯ ಯಾವುದೇ ಸಭೆಯ ಕೋರಂ ಪೂರ್ಣವಾಗಬೇಕಾದರೆ ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಿರುವುದು ಮತ್ತು ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ನಾಮನಿರ್ದೇಶಿತರು ಹಾಜರಾಗದೇ ಇದ್ದಾಗ ಕುಲಪತಿಯವರು ಹಾಜರಿರುವುದು ಯಾವಾಗಲೂ ಅವಶ್ಯವಾಗಿರತಕ್ಕದ್ದು.

(6) ಕಾರ್ಯಸೂಚಿ ವಿಷಯದ ಪರವಾಗಿ ಕುಲಾಧಿಪತಿಗಳು ಸಕಾರತ್ಮಾಕ ಮತವನ್ನು ನೀಡದ ಹೊರತು, ಯಾವುದೇ ಕಾರ್ಯಸೂಚಿ ವಿಷಯಗಳ ಸಂಬಂಧದಲ್ಲಿ ಪ್ರಬಂಧಕ ಮಂಡಳಿಯ ಸಭೆಯಲ್ಲಿ ಅವರು ಯಾವುದೇ ಗೊತ್ತುವಳಿಯನ್ನು ಅಂಗೀಕರಿಸತಕ್ಕದ್ದಲ್ಲ ಅಥವಾ ತೀರ್ಮಾನವನ್ನು ಕೈಗೊಳ್ಳತಕ್ಕದ್ದಲ್ಲ.

(7) ಪ್ರಬಂಧಕ ಮಂಡಳಿಯು ವಿಶ್ವವಿದ್ಯಾಲಯದ ಪ್ರಧಾನ ಪ್ರಬಂಧಕ ಸಂಸ್ಥೆಯಾಗಿರತಕ್ಕದ್ದು ಮತ್ತು ಅದು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಕಗೊಳಿಸುವುದು;

(ii) ವಿಶ್ವವಿದ್ಯಾಲಯವು ಅನುಸರಿಸಬೇಕಾದ ಕಾರ್ಯನೀತಿಗಳನ್ನು ರಚಿಸುವುದು;

(iii) ಈ ಅಧಿನಿಯಮದ ಅಥವಾ ಪರಿನಿಯಮಗಳ ಅಥವಾ ನಿಯಮಗಳ ಉಪಬಂಧಗಳಿಗೆ ಅನುಗುಣವಾಗಿ ಇರದ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ತೀರ್ಮಾನಗಳನ್ನು ಪುನರೀಕ್ಷಿಸುವುದು;

(iv) ವಿಶ್ವವಿದ್ಯಾಲಯದ ಆಯವ್ಯಯ ಮತ್ತು ವಾರ್ಷಿಕ ವರದಿಗಳನ್ನು ಅನುಮೋದಿಸುವುದು;

(v) ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸುವುದು ಅಥವಾ ಈಗಾಗಲೇ ಇರುವ ಪರಿನಿಯಮಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವುದು ಅಥವಾ ನಿರಸನಗೊಳಿಸುವುದು;

(vi) ವಿಶ್ವವಿದ್ಯಾಲಯವನ್ನು ಸ್ವಯಂಸಮಾಪನಗೊಳಿಸುವ ನಿರ್ಧಾರವನ್ನು ತೆಗೆದುಕೊಳ್ಳುವುದು;

(vii) ಸರ್ಕಾರಕ್ಕೆ ಸಲ್ಲಿಸುವ ಪ್ರಸ್ತಾವಗಳನ್ನು ಅನುಮೋದಿಸುವುದು;

(viii) ವಿಶ್ವವಿದ್ಯಾಲಯದ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕೆ ಅಪೇಕ್ಷಣೀಯವೆಂದು ಕಂಡುಬರುವಂಥ ತೀರ್ಮಾನಗಳನ್ನು ಮತ್ತು ಕ್ರಮಗಳನ್ನು ಕೈಗೊಳ್ಳುವುದು.

(8) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಸಮಯದಲ್ಲಿ ಮತ್ತು ಸ್ಥಳದಲ್ಲಿ ಪ್ರಬಂಧಕ ಮಂಡಳಿಯು ಒಂದು ವರ್ಷದಲ್ಲಿ ಕನಿಷ್ಠ ಮೂರು ಸಲ ಸಭೆ ಸೇರತಕ್ಕದ್ದು.

**24. ವ್ಯವಸ್ಥಾಪನಾ ಮಂಡಳಿ.-** (1) ವ್ಯವಸ್ಥಾಪನಾ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಗಳು;

(ii) ಸಹಕುಲಪತಿಗಳು;

(iii) ಕುಲಸಚಿವರು;

(iv) ಪ್ರಾಯೋಜಕ ಸಂಸ್ಥೆಯ ಇಬ್ಬರು ನಾಮನಿರ್ದೇಶಿತರು;

(v) ಕುಲಪತಿಗಳು ನಾಮನಿರ್ದೇಶಿಸಬಹುದಾದ ವ್ಯಾಸಂಗ ವಿಭಾಗಗಳ ಇಬ್ಬರು ಡೀನ್‌ಗಳು;

(2) ಕುಲಪತಿಯವರು ವ್ಯವಸ್ಥಾಪನಾ ಮಂಡಳಿಯ ಅಧ್ಯಕ್ಷರಾಗಿರತಕ್ಕದ್ದು ಮತ್ತು ಕುಲಸಚಿವರು ಕಾರ್ಯದರ್ಶಿಯಾಗಿರತಕ್ಕದ್ದು.

(3) ವ್ಯವಸ್ಥಾಪನಾ ಮಂಡಳಿಯು ವಿಶ್ವವಿದ್ಯಾಲಯದ ಕಾರ್ಯನಿರ್ವಾಹಕ ಸಂಸ್ಥೆಯಾಗಿರತಕ್ಕದ್ದು. ವ್ಯವಸ್ಥಾಪನಾ ಮಂಡಳಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ವ್ಯವಸ್ಥಾಪನಾ ಮಂಡಳಿಯ ಎಲ್ಲಾ ಸಭೆಗಳಲ್ಲಿ ಯಾವಾಗಲೂ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು ಹಾಗೂ ಕುಲಪತಿಯವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೇ ಇದ್ದ ಸಂದರ್ಭದಲ್ಲಿ ಸಭೆಯಲ್ಲಿ ಹಾಜರಿರುವ ಸದಸ್ಯರು ಚುನಾಯಿಸಿದ ಯಾವುದೇ ಇತರ ಸದಸ್ಯರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ವ್ಯವಸ್ಥಾಪನಾ ಮಂಡಳಿಯ ಸಭೆಯಲ್ಲಿ ಯಾವುದೇ ವಿಷಯವನ್ನು ಕುರಿತು ವಿವಾದ ಉಂಟಾದಲ್ಲಿ ಸದರಿ ವಿಷಯವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯದ ಬಗ್ಗೆ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**25. ಶೈಕ್ಷಣಿಕ ಪರಿಷತ್ತು.**–(1) ಶೈಕ್ಷಣಿಕ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಕಾರ್ಯದರ್ಶಿಗಳು

(iv) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಶೈಕ್ಷಣಿಕ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಶೈಕ್ಷಣಿಕ ಸಂಸ್ಥೆಯಾಗಿರತಕ್ಕದ್ದು ಮತ್ತು ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಹಾಗೂ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

***26. ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು.***– (1) ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಸಂಶೋಧನೆ ಮತ್ತು ಅನ್ವೇಷಣಾ ಸಮಿತಿಯಾಗಿರತಕ್ಕದ್ದು ಹಾಗೂ ಸಂಶೋಧನೆ ಮತ್ತು ಅನ್ವೇಷಣಾ ಕ್ಷೇತ್ರಗಳ ಆದ್ಯತೆಯೂ ಒಳಗೊಂಡಂತೆ, ವಿಶ್ವವಿದ್ಯಾಲಯವು ಕೈಗೊಳ್ಳಬೇಕಾದ ಸಂಶೋಧನೆ ಮತ್ತು ಅನ್ವೇಷಣೆಯ ಬಗ್ಗೆ ಒಂದು ವ್ಯಾಪಕವಾದ ಪರಿಪೂರ್ಣ ಭವಿಷ್ಯದ್ ದೃಷ್ಟಿಯನ್ನು ಒದಗಿಸತಕ್ಕದ್ದು. ಈ ಪರಿಷತ್ತು, ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಮತ್ತು ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಸಂಶೋಧನೆ ಮತ್ತು ಅನ್ವೇಷಣಾ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಸಂಶೋಧನೆಯ ಡೀನ್ – ಕಾರ್ಯದರ್ಶಿ

(iv) ಅನ್ವೇಷಣಾ ವಿಭಾಗದ ಮುಖ್ಯಸ್ಥರು – ಸದಸ್ಯರು

(V) ಎಲ್ಲಾ ವ್ಯಾಸಂಗ ವಿಭಾಗಗಳ ಡೀನ್‌ಗಳು – ಸದಸ್ಯರು ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

**27. ಹಣಕಾಸು ಸಮಿತಿ.**– (1) ಹಣಕಾಸು ಸಮಿತಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು ಅಥವಾ ಅವರ ನಾಮನಿರ್ದೇಶಿತರು – ಅಧ್ಯಕ್ಷರು

(ii) ಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಸದಸ್ಯರು

(iv) ಹಣಕಾಸು ಅಧಿಕಾರಿ – ಕಾರ್ಯದರ್ಶಿ

(v) ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು – ಸದಸ್ಯರು; ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಹಣಕಾಸು ಸಮಿತಿಯು ಹಣಕಾಸಿನ ವಿಷಯಗಳ ಜವಾಬ್ದಾರಿಯನ್ನು ವಹಿಸಿಕೊಳ್ಳುವ ವಿಶ್ವವಿದ್ಯಾಲಯದ ಪ್ರಧಾನ ಹಣಕಾಸು ಸಂಸ್ಥೆಯಾಗಿರತಕ್ಕದ್ದು ಹಾಗೂ ಅದು ಈ ಅಧಿನಿಯಮ, ನಿಯಮಗಳು ಮತ್ತು ಪರಿನಿಯಮಗಳ ಉಪಬಂಧಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಹಣಕಾಸು ವಿಷಯಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**28. ಇತರ ಪ್ರಾಧಿಕಾರಗಳು.–** ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ರಚನೆ, ಅಧಿಕಾರಗಳು ಹಾಗೂ ಪ್ರಕಾರ್ಯಗಳು ಪರಿನಿಯಮಗಳಿಂದ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

**29. ಒಂದು ಪ್ರಾಧಿಕಾರದ ಅಥವಾ ಸಂಸ್ಥೆಯ ಸದಸ್ಯತ್ವಕ್ಕೆ ಅನರ್ಹತೆ.–** ವಿಶ್ವವಿದ್ಯಾಲಯದ ಸಂಸ್ಥೆಗಳ ಯಾವುವೇ ಪ್ರಾಧಿಕಾರದ ಒಬ್ಬ ವ್ಯಕ್ತಿಯು,–

(ಎ) ಅಸ್ವಸ್ಥ ಚಿತ್ತನಾಗಿದ್ದು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿಸಲ್ಪಟ್ಟಿದ್ದರೆ;

(ಬಿ) ಅವಿಮುಕ್ತ ದಿವಾಳಿಯಾಗಿದ್ದರೆ;

(ಸಿ) ನೈತಿಕ ಅಧಃಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದರೆ;

(ಡಿ) ಖಾಸಗಿ ಬೋಧನಾ ತರಗತಿಗಳನ್ನು ನಡೆಸುತ್ತಿದ್ದರೆ ಅಥವಾ ಸ್ವತಃ ನಿರತನಾಗಿದ್ದರೆ;

(ಇ) ಯಾವುದೇ ವಿಧದಲ್ಲಿ, ಎಲ್ಲಿಯೇ, ಯಾವುದೇ ಪರೀಕ್ಷೆಯನ್ನು ನಡೆಸುವಲ್ಲಿ ಅನುಚಿತ ಅಭ್ಯಾಸದಲ್ಲಿ ತೊಡಗಿದ್ದಕ್ಕಾಗಿ ಅಥವಾ ಉತ್ತೇಜಿಸಿದ್ದಕ್ಕಾಗಿ ದಂಡಿತನಾಗಿದ್ದರೆ;

(ಎಫ್) ಪ್ರಾಯೋಜಿತ ಸಂಸ್ಥೆಯು ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಯಾವೊಬ್ಬ ಸದಸ್ಯನನ್ನು ಆ ಪದವನ್ನು ಹೊಂದಿರುವುದಕ್ಕೆ ಅರ್ಹನಲ್ಲನೆಂದು ಲಿಖಿತದಲ್ಲಿ ಅಭಿಪ್ರಾಯ ನೀಡಿದಾಗಲೆಲ್ಲಾ,

–ಸದಸ್ಯನಾಗಿರುವುದಕ್ಕೆ ಅನರ್ಹನಾಗತಕ್ಕದ್ದು.

**30. ಖಾಲಿಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಕಾರ್ಯ ಅಥವಾ ವ್ಯವಹರಣೆಗಳು ಕೇವಲ ಅದರಲ್ಲಿ ಯಾವುದೇ ಖಾಲಿಸ್ಥಾನ ಇದೆ ಎಂಬ ಕಾರಣದಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣದಿಂದ ಮಾತ್ರವೇ ಅಸಿಂಧುವಾಗತಕ್ಕದ್ದಲ್ಲ.

**31. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು.–** (1) ಯಾವುವೇ ಕಾರ್ಯಸೂಚಿ ವಿಷಯಗಳನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆಯದೇ ಪ್ರಬಂಧಕ ಮಂಡಳಿಯ ಅಥವಾ ವ್ಯವಸ್ಥಾಪನಾ ಮಂಡಳಿಯ ಅಥವಾ ಯಾವುದೇ ಸಮಿತಿಯ ಸಭೆಗಳ ಕಾರ್ಯಸೂಚಿ ವಿಷಯಗಳಲ್ಲಿ ಸೇರಿಸತಕ್ಕದ್ದಲ್ಲ ಅಥವಾ ಚರ್ಚೆಗೆ ತೆಗೆದುಕೊಳ್ಳತಕ್ಕದ್ದಲ್ಲ ಮತ್ತು ತೀರ್ಮಾನಿಸತಕ್ಕದ್ದಲ್ಲ.

(2) ಈ ಅಧಿನಿಯಮದ ಯಾವುದೇ ಉಪಬಂಧಗಳನ್ನು ಪಾಲಿಸದೆ ಇರುವ ಸಂದರ್ಭದಲ್ಲಿ, ಕುಲಾಧಿಪತಿಯವರು ವಿಶ್ವವಿದ್ಯಾಲಯದ ಯಾವುದೇ ಪದಾಧಿಕಾರಿ ಅಥವಾ ಸಂಸ್ಥೆಯು ತೆಗೆದುಕೊಂಡ ಎಲ್ಲಾ ತೀರ್ಮಾನಗಳನ್ನು ವಿಪರ್ಯಯಗೊಳಿಸುವ ಮೂಲಕ ಪರಿಹಾರ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಅಧಿಕಾರವನ್ನು ಎಲ್ಲಾ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಅಂಥ ಪರಿಹಾರ ಕ್ರಮದ ಪರಿಣಾಮವಾಗಿ ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ವಿಶ್ವವಿದ್ಯಾಲಯದ ಪದಾಧಿಕಾರಿ ಅಥವಾ ಸಂಸ್ಥೆಯು ಕೈಗೊಂಡಿದ್ದ ಎಲ್ಲಾ ಅಂಥ ಕ್ರಮಗಳು, ಮೊದಲಿನಿಂದಲೂ ಶೂನ್ಯ ಮತ್ತು ಅಕೃತ ಎಂದು ಭಾವಿಸತಕ್ಕದ್ದು ಹಾಗೂ ತತ್ಪರಿಣಾಮವಾಗಿ, ಉಪಬಂಧ ಪಾಲಿಸದೇ ಇದ್ದ ವಿಷಯ ಅಥವಾ ನಿರ್ಧಾರದ ಸಂಬಂಧದಲ್ಲಿ ಅದಕ್ಕೆ ಮುಂಚೆ ಇದ್ದ ವಸ್ತುಸ್ಥಿತಿಯೇ ಮುಂದುವರಿಯತಕ್ಕದ್ದು.

## ಅಧ್ಯಾಯ – V

## ಪರಿನಿಯಮಗಳು ಮತ್ತು ವಿನಿಯಮಗಳು

**32. ಪರಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಪರಿನಿಯಮಗಳು ವಿಶ್ವವಿದ್ಯಾಲಯಕ್ಕೆ ಮತ್ತು ಸಿಬ್ಬಂದಿಗೆ ಸಂಬಂಧಿಸಿದ ಎಲ್ಲಾ ಅಥವಾ ಯಾವುದೇ ವಿಷಯಕ್ಕೆ ಈ ಕೆಳಗಿನಂತೆ ಉಪಬಂಧ ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಕಾರ್ಯಕಲಾಪಗಳನ್ನು ನಡೆಸುವ ಮತ್ತು ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸದಿರುವ ಸಂಸ್ಥೆಗಳ ರಚನೆಯ ಕಾರ್ಯವಿಧಾನ;

(ii) ಶಾಶ್ವತ ಶಾಸನಬದ್ಧ ದತ್ತಿ ನಿಧಿ, ವಿಶ್ವವಿದ್ಯಾಲಯ ದತ್ತಿ ನಿಧಿ, ಸಾಮಾನ್ಯ ನಿಧಿ ಹಾಗೂ ಅಭಿವೃದ್ಧಿ ನಿಧಿಗಳ ನಿರ್ವಹಣೆ;

(iii) ಕುಲಪತಿಗಳು, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರ ನೇಮಕಾತಿಯ ನಿಬಂಧನೆಗಳು ಹಾಗೂ ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಪ್ರಕಾರ್ಯಗಳು;

(iv) ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ; ಅಧ್ಯಾಪಕರ ಮತ್ತು ನೌಕರರ ನೇಮಕಾತಿ ವಿಧಾನ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(v) ವಿಶ್ವವಿದ್ಯಾಲಯ ಹಾಗೂ ಅದರ ಅಧಿಕಾರಿಗಳು, ವ್ಯಾಸಂಗ ವಿಭಾಗದ (ಫ್ಯಾಕಲ್ಟಿ) ಸದಸ್ಯರು, ನೌಕರರು ಹಾಗೂ ವಿದ್ಯಾರ್ಥಿಗಳ ನಡುವೆ ಉಂಟಾದ ವಿವಾದಗಳನ್ನು ಪರಿಹರಿಸುವ ಕಾರ್ಯವಿಧಾನ;

(vi) ವಿಭಾಗಗಳು ಮತ್ತು ವ್ಯಾಸಂಗ ವಿಭಾಗಗಳ (ಫ್ಯಾಕಲ್ಟಿಗಳ) ಸೃಜನೆ, ರದ್ದತಿ ಅಥವಾ ಪುನಾರಚನೆ;

(vii) ಇತರ ವಿಶ್ವವಿದ್ಯಾಲಯಗಳು ಅಥವಾ ಉನ್ನತ ಕಲಿಕಾ ಸಂಸ್ಥೆಗಳ ಜೊತೆಯಲ್ಲಿ ಸಹಕರಿಸಬೇಕಾದ ರೀತಿ;

(viii) ಗೌರವ ಪದವಿಗಳ ನೀಡಿಕೆಯ ಕಾರ್ಯವಿಧಾನ;

(ix) ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿವೇತನ ಮಂಜೂರಾತಿಗೆ ಸಂಬಂಧಿಸಿದ ಉಪಬಂಧಗಳು;

(x) ವಿವಿಧ ವ್ಯಾಸಂಗ ಕ್ರಮಗಳಲ್ಲಿನ ಸೀಟುಗಳ ಸಂಖ್ಯೆ ಮತ್ತು ಅಂಥ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಕಾರ್ಯವಿಧಾನ;

(xi) ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಶುಲ್ಕ;

(xii) ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಉಚಿತ ಶಿಕ್ಷಣ, ಪದಕಗಳು ಹಾಗೂ ಬಹುಮಾನಗಳನ್ನು ಪ್ರಾರಂಭಿಸುವುದು;

(xiii) ಹುದ್ದೆಗಳನ್ನು ಸೃಜಿಸುವ ಮತ್ತು ರದ್ದುಗೊಳಿಸುವ ಕಾರ್ಯವಿಧಾನ;

(xiv) ಪ್ರಬಂಧಕ ಮಂಡಳಿಯು ನಿರ್ಧರಿಸಬಹುದಾದ ಅಥವಾ ಈ ಅಧಿನಿಯಮದ ಅಡಿಯಲ್ಲಿ ಪರಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬೇಕಾದ ಅಗತ್ಯತೆಯುಳ್ಳ ಯಾವುದೇ ಇತರ ವಿಷಯಗಳು.

33. **ಪರಿನಿಯಮಗಳ ರಚನೆ ವಿಧಾನ.**– (1) ವ್ಯವಸ್ಥಾಪನಾ ಮಂಡಳಿಯು ರಚಿಸಿದ ಮೊದಲ ಶಾಸನಗಳನ್ನು ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ವ್ಯವಸ್ಥಾಪನಾ ಮಂಡಳಿಯು ಸಲ್ಲಿಸಿದ ಮೊದಲ ಪರಿನಿಯಮಗಳನ್ನು ಪ್ರಬಂಧಕ ಮಂಡಳಿಯು ಪರಿಗಣಿಸತಕ್ಕದ್ದು ಹಾಗೂ ತಾನು ಅವಶ್ಯವೆಂದು ಭಾವಿಸಬಹುದಾದ ಅಂಥ ಮಾರ್ಪಾಡುಗಳು, ಯಾವುದಾದರು ಇದ್ದಲ್ಲಿ, ಅವುಗಳೊಡನೆ ತನ್ನ ಅನುಮೋದನೆಯನ್ನು ನೀಡತಕ್ಕದ್ದು.

(3) ವಿಶ್ವವಿದ್ಯಾಲಯವು, ಪ್ರಬಂಧಕ ಮಂಡಳಿಯು ಅನುಮೋದಿಸಿದ ಮೊದಲ ಪರಿನಿಯಮಗಳನ್ನು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ಪ್ರಕಟಿಸತಕ್ಕದ್ದು ಮತ್ತು ತದನಂತರ ಮೊದಲ ಪರಿನಿಯಮಗಳ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

34. **ಪರಿನಿಯಮಗಳ ತಿದ್ದುಪಡಿಯ ಅಧಿಕಾರ.**– ಪ್ರಬಂಧಕ ಮಂಡಳಿಯು ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸಬಹುದು ಅಥವಾ ಪರಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ಅವನ್ನು ನಿರಸನಗೊಳಿಸಬಹುದು.

35. **ವಿನಿಯಮಗಳು.**– ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ವಿನಿಯಮಗಳು ಈ ಮುಂದಿನ ಎಲ್ಲಾ ಅಥವಾ ಯಾವುವೇ ವಿಷಯಗಳಿಗೆ ಉಪಬಂಧಗಳನ್ನು ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ವಿದ್ಯಾರ್ಥಿ ಪಟ್ಟಿಯಲ್ಲಿ ಅವರುಗಳ ದಾಖಲಾತಿ ಹಾಗೂ ಮುಂದುವರಿಕೆ;

(ii) ವಿಶ್ವವಿದ್ಯಾಲಯದ ಎಲ್ಲಾ ಪದವಿಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ನಿಗದಿಪಡಿಸತಕ್ಕ ವ್ಯಾಸಂಗ ಕ್ರಮಗಳು;

(iii) ಪದವಿಗಳ ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರದಾನ;

(iv) ಸಂಶೋಧನಾ ವೇತನಗಳು (ಫೆಲೋಶಿಪ್), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಪದಕಗಳು ಮತ್ತು ಬಹುಮಾನಗಳನ್ನು ನೀಡಲು ಷರತ್ತುಗಳು;

(v) ಪರೀಕ್ಷೆಗಳನ್ನು ನಡೆಸುವುದು ಹಾಗೂ ಪರೀಕ್ಷೆ ನಡೆಸುವ ಸಂಸ್ಥೆಗಳು, ಪರೀಕ್ಷಕರು, ಪರೀಕ್ಷಾ ಮೇಲ್ವಿಚಾರಕರು, ಟ್ಯಾಬುಲೇಟರ್‌ಗಳು ಮತ್ತು ಮಾಡರೇಟರ್‌ಗಳ ನೇಮಕಾತಿ ಷರತ್ತುಗಳು ಮತ್ತು ವಿಧಾನ ಹಾಗೂ ಅವರ ಕರ್ತವ್ಯಗಳು;

(vi) ವಿಶ್ವವಿದ್ಯಾಲಯದ ಪರೀಕ್ಷೆಗಳ, ಪದವಿಗಳ ಹಾಗೂ ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರವೇಶಕ್ಕೆ ವಿಧಿಸತಕ್ಕ ಶುಲ್ಕ;

(vii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನಲ್ಲಿ ವಿದ್ಯಾರ್ಥಿಗಳ ನಿವಾಸಕ್ಕಾಗಿ ಷರತ್ತುಗಳು;

(viii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಶಿಸ್ತು ಪಾಲನೆ;

(ix) ಈ ಅಧಿನಿಯಮದ ಅಡಿಯಲ್ಲಿನ ಪರಿನಿಯಮಗಳಲ್ಲಿ ಉಪಬಂಧ ಕಲ್ಪಿಸಬಹುದಾಂಥ ಇತರ ಎಲ್ಲಾ ವಿಷಯಗಳು.

**36. ವಿನಿಯಮಗಳ ರಚನೆ ವಿಧಾನ.–** ವಿನಿಯಮಗಳನ್ನು ಶೈಕ್ಷಣಿಕ ಪರಿಷತ್ತು ರಚಿಸತಕ್ಕದ್ದು ಹಾಗೂ ವ್ಯವಸ್ಥಾಪನಾ ಮಂಡಳಿಯು ಅನುಮೋದಿಸತಕ್ಕದ್ದು.

**37. ವಿನಿಯಮಗಳ ತಿದ್ದುಪಡಿಗೆ ಅಧಿಕಾರ.–** ವ್ಯವಸ್ಥಾಪನಾ ಮಂಡಳಿಯ ಅನುಮೋದನೆಯೊಡನೆ ಶೈಕ್ಷಣಿಕ ಪರಿಷತ್ತು ಹೊಸ ವಿನಿಯಮಗಳನ್ನು ಅಥವಾ ಹೆಚ್ಚುವರಿ ವಿನಿಯಮಗಳನ್ನು ರಚಿಸಬಹುದು ಅಥವಾ ವಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ನಿರಸನಗೊಳಿಸಬಹುದು.

**38. ಶುಲ್ಕ ನಿಯಂತ್ರಣ ಸಮಿತಿ.–** (1) ಸರ್ಕಾರವು ರಚಿಸಿದ ನಿವೃತ್ತ ಸರ್ವೋಚ್ಚ ನ್ಯಾಯಾಲಯದ ಅಥವಾ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು ಮುಖ್ಯಸ್ಥರಾಗಿರುವ ಮತ್ತು ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ, ಉನ್ನತ ಶಿಕ್ಷಣ ಪ್ರಭಾರದಲ್ಲಿರುವ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಅಥವಾ ಕಾರ್ಯದರ್ಶಿ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿದೇಶಿತರು, ವೈದ್ಯಕೀಯ ಶಿಕ್ಷಣದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು ಒಬ್ಬ ಮಹಿಳೆಯೂ ಸೇರಿದಂತೆ ಪ್ರಬಂಧಕ ಮಂಡಳಿಯು ನಾಮನಿರ್ದೇಶಿಸಿದ ಇಬ್ಬರು ಶಿಕ್ಷಣ ತಜ್ಞರು ಇವರುಗಳನ್ನು ಒಳಗೊಂಡ ಒಂದು ಶುಲ್ಕ ನಿಯಂತ್ರಣ ಸಮಿತಿಯು, 9ನೇ ಪ್ರಕರಣದ ಅಡಿಯಲ್ಲಿ ಕರ್ನಾಟಕದ ವಿದ್ಯಾರ್ಥಿಗಳಿಗಾಗಿ ಮೀಸಲಿರಿಸಿದ ವಿಶ್ವವಿದ್ಯಾಲಯದ ಸ್ಥಾನಗಳ ಶುಲ್ಕವನ್ನು ನಿಯಂತ್ರಿಸತಕ್ಕದ್ದು. ಸಮಿತಿಯಲ್ಲಿ ಈ ಉದ್ದೇಶಕ್ಕಾಗಿ ಒಬ್ಬರು ಖ್ಯಾತ ಚಾರ್ಟರ್ಡ್ ಅಕೌಂಟೆಂಟ್ ರವರನ್ನು ಸಹ ಸದಸ್ಯನನ್ನಾಗಿ ಸೇರಿಸಿಕೊಳ್ಳತಕ್ಕದ್ದು.

(2) ಸಮಿತಿಯು ವಿಶ್ವವಿದ್ಯಾಲಯದ ಪ್ರವೇಶಗಳ ಮತ್ತು ಶುಲ್ಕದ ಸಂಗ್ರಹಣೆಯ ಅನುಪಾಲನೆಯನ್ನು ನೋಡಿಕೊಳ್ಳತಕ್ಕದ್ದು.

## ಅಧ್ಯಾಯ – VI

## ಸಂಕೀರ್ಣ

**39. ನೌಕರರ ಸೇವಾ ಷರತ್ತುಗಳು.–** (1) ಪರಿನಿಯಮಗಳ ಮತ್ತು ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಥವಾ ನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳು, ಯಾವುದಾದರೂ ಇದ್ದಲ್ಲಿ, ಅವುಗಳಿಗೆ ಒಳಪಟ್ಟು ಪ್ರತಿಯೊಬ್ಬ ನೌಕರನು ಲಿಖಿತ ಕರಾರಿನ ಅಡಿಯಲ್ಲಿ ನೇಮಕಗೊಳ್ಳತಕ್ಕದ್ದು ಮತ್ತು ಅದನ್ನು ವಿಶ್ವವಿದ್ಯಾಲಯದಲ್ಲಿ ಇಟ್ಟುಕೊಳ್ಳತಕ್ಕದ್ದು ಹಾಗೂ ಅದರ ಪ್ರತಿಯನ್ನು ಸಂಬಂಧಪಟ್ಟ ನೌಕರನಿಗೆ ನೀಡತಕ್ಕದ್ದು.

(2) ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಕಾರ್ಯವಿಧಾನಗಳ ಮೂಲಕ ನಿಯಂತ್ರಿಸತಕ್ಕದ್ದು.

(3) ಕರಾರಿನಿಂದಾಗಿ ವಿಶ್ವವಿದ್ಯಾಲಯ ಮತ್ತು ನೌಕರನ ಮಧ್ಯದಲ್ಲಿ ಉದ್ಭವಿಸಬಹುದಾದ ಯಾವುದೇ ವಿವಾದವನ್ನು, ಲಿಖಿತ ಕರಾರಿನಲ್ಲಿ ಉಪಬಂಧಿಸಿದ ವಿಧಾನದಲ್ಲಿ ಹಾಗೂ ಪರಿನಿಯಮಗಳ ಅನುಸಾರವಾಗಿ ಪರಿಹರಿಸತಕ್ಕದ್ದು.

**40. ಮೇಲ್ಮನವಿ ಹಕ್ಕು.–** ವಿಶ್ವವಿದ್ಯಾಲಯವು ತನ್ನ ನೌಕರರ ಅಥವಾ ವಿದ್ಯಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡ ಸಂದರ್ಭದಲ್ಲಿ, ಬಾಧಿತ ನೌಕರ ಅಥವಾ ವಿದ್ಯಾರ್ಥಿಗಳು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಮೇಲ್ಮನವಿ ಹಕ್ಕನ್ನು ಹೊಂದಿರತಕ್ಕದ್ದು.

**41. ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿ .–** ವಿಶ್ವವಿದ್ಯಾಲಯವು, ತನ್ನ ನೌಕರರ ಪ್ರಯೋಜನಕ್ಕಾಗಿ, ಪರಿನಿಯಮಗಳು ಮತ್ತು ಜಾರಿಯಲ್ಲಿರುವ ಕಾನೂನುಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿಯನ್ನು ರಚಿಸತಕ್ಕದ್ದು ಹಾಗೂ ಅಂಥ ವಿಮಾ ಯೋಜನೆಗಳನ್ನು ಒದಗಿಸತಕ್ಕದ್ದು.

**42. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಇತರ ಸಂಸ್ಥೆಯ ಸದಸ್ಯನಾಗಿ ಯಾವೊಬ್ಬ ವ್ಯಕ್ತಿಯು ಸೂಕ್ತವಾಗಿ ಆಯ್ಕೆಯಾಗಿದ್ದಾನೆಯೇ ಅಥವಾ ನೇಮಕಗೊಂಡಿದ್ದಾನೆಯೇ ಅಥವಾ ಅದಕ್ಕೆ ಅರ್ಹನಾಗಿದ್ದಾನೆಯೇ ಎಂಬ ಯಾವುದೇ ಪ್ರಶ್ನೆ ಉದ್ಭವಿಸಿದರೆ, ಆ ವಿಷಯವನ್ನು ತೀರ್ಮಾನಕ್ಕಾಗಿ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**43. ಸಮಿತಿಗಳ ರಚನೆ.–** 22ನೇ ಪ್ರಕರಣದಲ್ಲಿ ನಮೂದಿಸಿದ ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಅಧಿಕಾರವನ್ನು ಹೊಂದಿರುವ ಅಂಥ ಸದಸ್ಯರನ್ನು ಒಳಗೊಂಡ ಅಂಥ ಪ್ರಾಧಿಕಾರದ ಒಂದು ಸಮಿತಿಯನ್ನು ರಚಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**44. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಂಸ್ಥೆಯ ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ಪೈಕಿ ಯಾವುದೇ ಸ್ಥಾನವು ಆಕಸ್ಮಿಕವಾಗಿ ಖಾಲಿಯಾದರೆ, ಯಾರ ಸ್ಥಾನವು ಖಾಲಿಯಾಗಿ ತುಂಬಬೇಕಾಗಿ ಬಂದಿದೆಯೋ ಆ ಸದಸ್ಯರನ್ನು ಯಾವ ರೀತಿಯಲ್ಲಿ ಆರಿಸಲಾಗಿತ್ತೋ ಅದೇ ರೀತಿಯಲ್ಲಿ ಹೊಸ ಸದಸ್ಯರನ್ನು ಆರಿಸಿ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ಖಾಲಿ ಸ್ಥಾನವನ್ನು ಭರ್ತಿ ಮಾಡಿದ ವ್ಯಕ್ತಿಯು ಆತನು/ಆಕೆಯು ಯಾವ ಸದಸ್ಯನ ಸ್ಥಾನದಲ್ಲಿ ಭರ್ತಿಯಾಗಿರುವರೋ ಆ ಸದಸ್ಯರು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯರಾಗಿ ಉಳಿಯುತ್ತಿದ್ದ ಬಾಕಿ ಅವಧಿಯವರೆಗೆ ಮಾತ್ರ ಸದಸ್ಯರಾಗಿರತಕ್ಕದ್ದು.

**45. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.–** ಈ ಅಧಿನಿಯಮ ಅಥವಾ ಪರಿನಿಯಮಗಳು ಅಥವಾ ನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ವಿಶ್ವವಿದ್ಯಾಲಯದ ಯಾವೊಬ್ಬ ಅಧಿಕಾರಿ ಅಥವಾ ಇತರ ನೌಕರರ ವಿರುದ್ಧ ಯಾವುದೇ ದಾವೆ ಅಥವಾ ಇತರ ಕಾನೂನು ವ್ಯವಹರಣೆಗಳನ್ನು ನಡೆಸಲು ಅವಕಾಶ ಇರತಕ್ಕದ್ದಲ್ಲ.

**46. ತಾತ್ಕಾಲಿಕ ಉಪಬಂಧಗಳು.–** ಈ ಅಧಿನಿಯಮ ಮತ್ತು ಪರಿನಿಯಮಗಳ ಯಾವುದೇ ಇತರ ಉಪಬಂಧಗಳಲ್ಲಿ ಏನೇ ಇದ್ದರೂ,–

(i) ಮೊದಲ ಕುಲಪತಿ ಮತ್ತು ಸಹಕುಲಪತಿ, ಯಾರಾದರೂ ಇದ್ದರೆ, ಅವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(ii) ಮೊದಲ ಕುಲಸಚಿವರನ್ನು ಮತ್ತು ಮೊದಲ ಹಣಕಾಸು ಅಧಿಕಾರಿಯವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು; ಮತ್ತು

(iii) ಮೊದಲ ವ್ಯವಸ್ಥಾಪನ ಮಂಡಳಿ, ಮೊದಲ ಹಣಕಾಸು ಸಮಿತಿ, ಮೊದಲ ದೂರ ಶಿಕ್ಷಣ ಸಮಿತಿ, ಮೊದಲ ಸಂಶೋಧನಾ ಪರಿಷತ್ತು ಹಾಗೂ ಮೊದಲ ಶೈಕ್ಷಣಿಕ ಪರಿಷತ್ತನ್ನು ಕುಲಾಧಿಪತಿಯವರು ರಚಿಸತಕ್ಕದ್ದು.

**47. ಶಾಶ್ವತ ಶಾಸನಬದ್ಧ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಕನಿಷ್ಠ ಇಪ್ಪತ್ತೈದು ಕೋಟಿ ರೂಪಾಯಿಗಳನ್ನುಳ್ಳ ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು ಇದರ ಪೈಕಿ ಕನಿಷ್ಠ ಹದಿನೈದು ಕೋಟಿ ರೂಪಾಯಿಗಳು ನಗದು ರೂಪದಲ್ಲಿ ಮತ್ತು ಇನ್ನುಳಿದದ್ದು ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ಇರತಕ್ಕದ್ದು ಮತ್ತು ಇದನ್ನು ತಾನಾಗಿಯೆ ಹೆಚ್ಚಿಸಬಹುದಾಗಿದ್ದು ಆದರೆ ಕಡಿಮೆ ಮಾಡತಕ್ಕದ್ದಲ್ಲ :

ಪರಂತು, ಬೆಂಗಳೂರು ಅಥವಾ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊರಗಿರುವ ವಿಶ್ವವಿದ್ಯಾಲಯದ ಸಂದರ್ಭದಲ್ಲಿ ಕನಿಷ್ಠ ಹತ್ತು ಕೋಟಿ ರೂಪಾಯಿಗಳು ನಗದು ರೂಪದಲ್ಲಿರತಕ್ಕದ್ದು ಮತ್ತು ಉಳಿದ ಐದು ಕೋಟಿ ರೂಪಾಯಿಗಳು ಬ್ಯಾಂಕ್ ಗ್ಯಾರಂಟಿಯ ರೂಪದಲ್ಲಿರತಕ್ಕದ್ದು.

(2). ವಿಶ್ವವಿದ್ಯಾಲಯವು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಹಣವನ್ನು ಹೂಡಲು ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಗೆ ವರ್ಗಾವಣೆ ಮಾಡಬಹುದು. ವಿಶ್ವವಿದ್ಯಾಲಯವನ್ನು ಸಮಾಪಣೆಗೊಳಿಸುವ ಸಂದರ್ಭದಲ್ಲಿ ಹೊರತುಪಡಿಸಿ, ಇತರ ಯಾವ ಸಂದರ್ಭದಲ್ಲೂ ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನೂ ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(4) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಿದ ವರಮಾನದ ಶೇಕಡಾ ಎಪ್ಪತ್ತೈದರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತೈದರಷ್ಟನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**48. ವಿಶ್ವವಿದ್ಯಾಲಯದ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ನಿಧಿಗಳನ್ನು ಒಳಗೊಂಡ ವಿಶ್ವವಿದ್ಯಾಲಯದ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದು ಕಾಲಕಾಲಕ್ಕೆ ಸ್ವೀಕರಿಸಬಹುದಾದ ದೇಣಿಗೆಗಳು ಮತ್ತು ಇತರ ನಿಧಿಗಳನ್ನು ಒಳಗೊಂಡಿರತಕ್ಕದ್ದು.

(2) ವಿಶ್ವವಿದ್ಯಾಲಯವು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ವಿಶ್ವವಿದ್ಯಾಲಯದ ದತ್ತಿನಿಧಿಯನ್ನು ಹೂಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯ ದತ್ತಿ ನಿಧಿಯು, ವಿಶ್ವವಿದ್ಯಾಲಯವು ತನ್ನ ಸಾಮಾಜಿಕ ಧ್ಯೇಯೋದ್ದೇಶಗಳನ್ನು ನೆರವೇರಿಸುವ ಸಂದರ್ಭದಲ್ಲಿ ಮತ್ತು/ಅಥವಾ ಮುಂಗಾಣದ ಸನ್ನಿವೇಶದಲ್ಲಿ ಉದ್ಭವಿಸಬಹುದಾದ ಹಣಕಾಸು ಸವಾಲುಗಳಿಂದ ತನ್ನನ್ನು ರಕ್ಷಿಸಿಕೊಳ್ಳುವುದಕ್ಕಾಗಿ, ಸ್ವಇಚ್ಛೆಯಿಂದ ನಿರ್ವಹಿಸಿಕೊಂಡು ಬರಲು ಮತ್ತು ಜವಾಬ್ದಾರಿಯಿಂದ ಹಣ ಹೂಡಿಕೆ ಮಾಡಲು ಇಚ್ಛೆಯುಳ್ಳವರಾಗಿ ಸ್ವಯಂ ವಿಧಿಸಿಕೊಂಡ ನಿಧಿಯಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಗೆ ವರ್ಗಾಯಿಸಬಹುದು. ವಿಶ್ವವಿದ್ಯಾಲಯದ ಸಮಾಪಣೆಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನು ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(5) ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಸ್ವೀಕರಿಸಿದ ವರಮಾನದ ಶೇಕಡಾ ಎಂಭತ್ತರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸದ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತರಷ್ಟನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**49. ಸಾಮಾನ್ಯ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಸಾಮಾನ್ಯ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯವು ವಿಧಿಸಬಹುದಾದ ಎಲ್ಲಾ ಶುಲ್ಕಗಳು;

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವುದೇ ಇತರ ಮೂಲದಿಂದ ಸ್ವೀಕರಿಸಲಾದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ದೇಣಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು;

(2) ಸಾಮಾನ್ಯ ನಿಧಿಗೆ ಜಮಾ ಮಾಡುವ ನಿಧಿಗಳನ್ನು ವಿಶ್ವವಿದ್ಯಾಲಯದ ಎಲ್ಲಾ ಆವರ್ತಕ ವೆಚ್ಚಗಳನ್ನು ಭರಿಸಲು ಉಪಯೋಗಿಸಕೊಳ್ಳತಕ್ಕದ್ದು.

**50. ಅಭಿವೃದ್ಧಿ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಅಭಿವೃದ್ಧಿ ನಿಧಿಯನ್ನು ಸಹ ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿದ್ಯಾರ್ಥಿಗಳಿಂದ ವಿಧಿಸಬಹುದಾದ ಅಭಿವೃದ್ಧಿ ಶುಲ್ಕಗಳು;

(ii) ವಿಶ್ವವಿದ್ಯಾಲಯದ ಅಭಿವೃದ್ಧಿಯ ಉದ್ದೇಶಗಳಿಗಾಗಿ ಯಾವುದೇ ಇತರ ಮೂಲಗಳಿಂದ ಸ್ವೀಕರಿಸಿದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ವಂತಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು; ಮತ್ತು

(v) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಲಾದ ಎಲ್ಲಾ ವರಮಾನಗಳು.

(2) ಅಭಿವೃದ್ಧಿ ನಿಧಿಗೆ ಕಾಲಕಾಲಕ್ಕೆ ಜಮಾ ಮಾಡಿದ ನಿಧಿಯನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಉಪಯೋಗಿಸಕೊಳ್ಳತಕ್ಕದ್ದು.

**51. ನಿಧಿಗಳ ನಿರ್ವಹಣೆ.–** 47, 48, 49 ಮತ್ತು 50ನೇ ಪ್ರಕರಣಗಳಡಿಯಲ್ಲಿ ಸ್ಥಾಪಿಸಲಾದ ನಿಧಿಗಳನ್ನು ಪ್ರಬಂಧಕ ಮಂಡಳಿಯ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ನಿಯಂತ್ರಿಸತಕ್ಕದ್ದು ಹಾಗೂ ನಿರ್ವಹಿಸತಕ್ಕದ್ದು.

**52. ವಾರ್ಷಿಕ ವರದಿ.–** (1) ವಿಶ್ವವಿದ್ಯಾಲಯದ ವಾರ್ಷಿಕ ವರದಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ಅದರ ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಪ್ರಬಂಧಕ ಮಂಡಳಿಯು ವಾರ್ಷಿಕ ವರದಿಯನ್ನು ತನ್ನ ಸಭೆಯಲ್ಲಿ ಪರಿಗಣಿಸತಕ್ಕದ್ದು ಹಾಗೂ ಅದನ್ನು ಮಾರ್ಪಾಡುಗಳೊಡನೆ ಅಥವಾ ಮಾರ್ಪಾಡುಗಳಿಲ್ಲದೆ ಅನುಮೋದಿಸಬಹುದು.

(3) ಪ್ರಬಂಧಕ ಮಂಡಳಿಯು ಸೂಕ್ತವಾಗಿ ಅನುಮೋದಿಸಿದ ವಾರ್ಷಿಕ ವರದಿಯ ಒಂದು ಪ್ರತಿಯನ್ನು ಪ್ರತಿವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ಡಿಸೆಂಬರ್ 31ಕ್ಕೆ ಮೊದಲು ಸಂದರ್ಶಕರಿಗೆ ಮತ್ತು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**53. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.–** (1) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕ ಪತ್ರ ಮತ್ತು ಜಮಾ ಖರ್ಚು ಪಟ್ಟಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯಕ್ಕೆ ಎಲ್ಲಾ ಮೂಲಗಳಿಂದ ಪ್ರಾಪ್ತವಾಗುವ ಅಥವಾ ಸ್ವೀಕರಿಸಲಾಗುವ ಎಲ್ಲಾ ನಿಧಿಗಳು ಹಾಗೂ ವಿತರಿಸಿದ ಅಥವಾ ಸಂದಾಯ ಮಾಡಿದ ಎಲ್ಲಾ ಮೊಬಲಗುಗಳನ್ನು ವಿಶ್ವವಿದ್ಯಾಲಯವು ನಿರ್ವಹಿಸುವ ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕಪತ್ರಗಳನ್ನು ಪ್ರತಿ ವರ್ಷವೂ ಭಾರತದ ಚಾರ್ಟೆಡ್ ಅಕೌಟೆಂಟ್‌ಗಳ ಸಂಸ್ಥೆಯ ಸದಸ್ಯರಾಗಿರುವ ಒಬ್ಬ ಲೆಕ್ಕಪರಿಶೋಧಕರಿಂದ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಲೆಕ್ಕಪರಿಶೋಧನಾ ವರದಿಯೊಡನೆ, ಪ್ರತಿ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ನವೆಂಬರ್ 30ಕ್ಕೆ ಮೊದಲು ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(4) ವಾರ್ಷಿಕ ಲೆಕ್ಕಪತ್ರಗಳು, ಜಮಾಖರ್ಚು ಪಟ್ಟಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಪ್ರಬಂಧಕ ಮಂಡಳಿಯು ತನ್ನ ಸಭೆಯಲ್ಲಿ ಪರ್ಯಾಲೋಚಿಸತಕ್ಕದ್ದು ಮತ್ತು ಪ್ರಬಂಧಕ ಮಂಡಳಿಯು ಅದನ್ನು ತನ್ನ ಅಭಿಪ್ರಾಯಗಳೊಡನೆ ಸಂದರ್ಶಕರಿಗೆ ಹಾಗೂ ಸರ್ಕಾರಕ್ಕೆ ಪ್ರತಿ ವರ್ಷದ ಡಿಸೆಂಬರ್ 31ಕ್ಕೆ ಮೊದಲು ಕಳುಹಿಸತಕ್ಕದ್ದು.

**54. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ.-** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಮಿತಿಯ ಯಾವುದೇ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ ಅಥವಾ ಗೊತ್ತುವಳಿಯು ಅಥವಾ ವಿಶ್ವವಿದ್ಯಾಲಯದ ಸ್ವಾಧೀನದಲ್ಲಿರುವ ಇತರ ದಾಖಲೆಗಳು ಅಥವಾ ವಿಶ್ವವಿದ್ಯಾಲಯವು ಯುಕ್ತವಾಗಿ ನಿರ್ವಹಿಸುವ ಯಾವುದೇ ರಿಜಿಸ್ಟರ್‌ನಲ್ಲಿಯ ಯಾವುದೇ ನಮೂದುಗಳ ಪ್ರತಿಯನ್ನು, ಅದರ ಮೇಲೆ ಕುಲಸಚಿವರು ಪ್ರಮಾಣೀಕರಿಸಿದ್ದರೆ, ಅದನ್ನು ಅಂಥ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ, ಗೊತ್ತುವಳಿ ಅಥವಾ ದಾಖಲೆ ಅಥವಾ ರಿಜಿಸ್ಟರ್‌ನಲ್ಲಿ ಇರುವ ನಮೂದನ್ನು ಮೇಲ್ನೋಟದ ಸಾಕ್ಷ್ಯವೆಂಬುದಾಗಿ ಸ್ವೀಕರಿಸತಕ್ಕದ್ದು ಮತ್ತು ವಿಷಯಗಳ ಸಾಕ್ಷಿಯಾಗಿ ಅಂಗೀಕರಿಸತಕ್ಕದ್ದು ಹಾಗೂ ಮೂಲ ದಾಖಲೆಗಳನ್ನೇ ಸಲ್ಲಿಸಿದ್ದರೆ ಅದನ್ನು, ದಾಖಲಿಸಿರುವ ವಿಷಯಗಳು ಮತ್ತು ವಹಿವಾಟುಗಳ ಸಾಕ್ಷ್ಯವಾಗಿ ಅಂಗೀಕರಿಸಲಾಗುತ್ತಿತ್ತೋ, ಅದೇ ರೀತಿಯಲ್ಲಿ ಇವನ್ನೂ ಸಾಕ್ಷ್ಯವಾಗಿ ಅಂಗೀಕರಿಸತಕ್ಕದ್ದು.

**55. ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ.-** ರಾಜ್ಯಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಥವಾ ಅದರಲ್ಲಿ ಇರುವ ಯಾವುವೇ ಉಪಬಂಧಗಳನ್ನು ಅಥವಾ ಅದರಡಿಯಲ್ಲಿ ರಚಿಸಿದ ಯಾವುವೇ ನಿಯಮಗಳು ಅಥವಾ ಆದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿರ್ದೇಶನ ನೀಡುವುದು ಅವಶ್ಯವೆಂದು ಅಥವಾ ಉಚಿತವೆಂದು ಅಭಿಪ್ರಾಯಪಟ್ಟಲ್ಲಿ ಅದು ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ ಅಥವಾ ಸಂದರ್ಭಾನುಸಾರವಾಗಿ ವ್ಯವಸ್ಥಾಪನಾ ಮಂಡಳಿಯು ಅಂಥ ಪ್ರತಿಯೊಂದು ನಿರ್ದೇಶನವನ್ನು ಪಾಲಿಸತಕ್ಕದ್ದು.

**56. ದಂಡಗಳು.-** (1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿತವಾದ ನಿಯಮಗಳು ಉಪಬಂಧಗಳನ್ನು ಅಥವಾ ಯಾವುದೇ ಪರೀಕ್ಷಾ ವಿಷಯಗಳನ್ನು ಅಥವಾ ಪದವಿಗಳನ್ನು ನೀಡುವುದಕ್ಕೆ ಅಥವಾ ಅಂಕಪಟ್ಟಿಗಳನ್ನು ನೀಡುವುದಕ್ಕೆ ಸಂಬಂಧಪಟ್ಟ ವಿಷಯಗಳಲ್ಲಿ ಉಲ್ಲಂಘನೆಗಳನ್ನು ಮಾಡುವ ಯಾವೊಬ್ಬ ವ್ಯಕ್ತಿಯು, ಅಪರಾಧ ನಿರ್ಣಯವಾದ ಮೇಲೆ, ಐವತ್ತು ಸಾವಿರ ರೂಪಾಯಿಗಳಿಗೆ ಕಡಿಮೆಯಲ್ಲದ ಆದರೆ ಹತ್ತು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಆರು ತಿಂಗಳ ಅವಧಿಗಿಂತ ಕಡಿಮೆಯಲ್ಲದ ಆದರೆ ಎರಡು ವರ್ಷಗಳ ಅವಧಿಯವರೆಗೆ ವಿಸ್ತರಿಸಬಹುದಾದ ಕಾರಾವಾಸದಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು:

ಪರಂತು, ವಿಶ್ವವಿದ್ಯಾಲಯವೂ ಸಹ ಒಳಗೊಂಡಿರುವಲ್ಲಿ, ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಈ ಅಧಿನಿಯಮದ ಅಡಿಯಲ್ಲಿ ನೀಡಲಾದ ಅನುಮತಿ ಪತ್ರವನ್ನು ಹಿಂತೆಗೆದುಕೊಳ್ಳತಕ್ಕದ್ದು.

(2) ಈ ಪ್ರಕರಣದ ಅಡಿಯಲ್ಲಿನ ದಂಡವನ್ನು ಇತರ ಯಾವುದೇ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಲಾದ ದಂಡಕ್ಕೆ ಬಾಧಕವಾಗದಂತೆ ವಿಧಿಸಬಹುದು.

**57. ಪ್ರವೇಶಿಸುವ ಮತ್ತು ಪರಿಶೋಧಿಸುವ ಅಧಿಕಾರ.-** ಈ ಉದ್ದೇಶಕ್ಕಾಗಿ, ರಾಜ್ಯಸರ್ಕಾರದಿಂದ ಪ್ರಾಧಿಕೃತಗೊಂಡ 'ಎ' ಸಮೂಹದ ಅಧಿಕಾರಿ ದರ್ಜೆಗಿಂತ ಕಡಿಮೆಇಲ್ಲದ ದರ್ಜೆಯ ಯಾವೊಬ್ಬ ಅಧಿಕಾರಿಯು, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಶನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ 37) ಅಡಿಯಲ್ಲಿ ನಿರ್ದಿಷ್ಟಪಡಿಸಿರಬಹುದಾದ ಅಂಥ ಷರತ್ತುಗಳಿಗೆ ಒಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ, ಆ ಅಧಿನಿಯಮದ 9ನೇ ಪ್ರಕರಣದ ಅಡಿಯಲ್ಲಿ ಉಪಬಂಧಿಸಲಾದಂತಹವೇ ಅಧಿಕಾರಗಳನ್ನು ಚಲಾಯಿಸಲು ಮತ್ತು ಪ್ರಕಾರ್ಯಗಳನ್ನು ನೆರವೇರಿಸಲು ಅಧಿಕೃತನಾದ ಅಧಿಕಾರಿ ಎಂಬುದಾಗಿ ಭಾವಿಸತಕ್ಕದ್ದು.

**58. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ನಿರ್ದೇಶನವನ್ನು ನೀಡುವ ಅಧಿಕಾರ.-** (1) ವಿಶ್ವವಿದ್ಯಾಲಯವು ತನ್ನ ರಚನೆ ಅಥವಾ ನಿಗಮನವನ್ನು ನಿಯಂತ್ರಿಸುವ ಕಾನೂನಿಗೆ ಅನುಸಾರವಾಗಿ ತನ್ನ ಸಮಾಪನವನ್ನು ಉದ್ದೇಶಿಸಿದ್ದಲ್ಲಿ, ಅದು ಕನಿಷ್ಠ ಆರು ತಿಂಗಳ ಲಿಖಿತ ಪೂರ್ವ ಸೂಚನೆಯನ್ನು (ನೋಟಿಸು) ಸರ್ಕಾರಕ್ಕೆ ನೀಡತಕ್ಕದ್ದು.

(2) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಈ ಕೆಳಗಿನವುಗಳ ಬಗ್ಗೆ, ಎಂದರೆ:-

(i) ಪದವಿಯನ್ನು ನೀಡುವುದಕ್ಕಾಗಿ ಬೋಧನೆಯ ಗುಣಮಟ್ಟ;

(ii) ಶಿಕ್ಷಣದ ಗುಣಮಟ್ಟ;

(iii) ಉನ್ನತ ಶಿಕ್ಷಣದ ವ್ಯಾಪಾರೀಕರಣವನ್ನು ತಡೆಗಟ್ಟುವುದು;

(iv) ಅಧಿನಿಯಮದ ಉಪಬಂಧಗಳ ಉಲ್ಲಂಘನೆಯ ಬಗ್ಗೆ, ಯಾವುದಾದರೂ ಇದ್ದಲ್ಲಿ,

- ಇವುಗಳ ಬಗ್ಗೆ ನಿಯತಕಾಲಿಕ ಪರಿವೀಕ್ಷಣೆಯನ್ನು ನಡೆಸತಕ್ಕದ್ದು ಮತ್ತು ಸರ್ಕಾರಕ್ಕೆ ವರದಿಯನ್ನು ಕಳುಹಿಸತಕ್ಕದ್ದು.

(3) ದುರ್ವ್ಯವಹರಣೆ, ದುರಾಡಳಿತ ಮತ್ತು ಅಶಿಸ್ತು ಆಗಿದೆ ಎಂಬುದನ್ನು ಗುರುತಿಸಿದರೆ, ಸರ್ಕಾರವು, ವಿಶ್ವವಿದ್ಯಾಲಯದ ಆಡಳಿತವರ್ಗದವರಿಗೆ ಆಡಳಿತವನ್ನು ಸರಿಪಡಿಸಬೇಕೆಂದು ನಿರ್ದೇಶನಗಳನ್ನು ನೀಡತಕ್ಕದ್ದು. ನಿಯಮಿಸಬಹುದಾದ ಅಂಥ ಅವಧಿಯೊಳಗೆ ಆ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುವ ಹಕ್ಕು ಸರ್ಕಾರದಲ್ಲಿ ನಿಹಿತವಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು ಸಮಾಪನಗೊಳಿಸುವ ವಿಧಾನವು, ಸರ್ಕಾರವು ಈ ಸಂಬಂಧದಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು:

ಪರಂತು, ವಿಶ್ವವಿದ್ಯಾಲಯವು ತನ್ನ ಕಾರಣಗಳನ್ನು ಹೇಳಿಕೊಳ್ಳಲು ಸಮಂಜಸ ಅವಕಾಶಗಳನ್ನು ನೀಡಿದ ಹೊರತು ಅಂಥ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

(5) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೋಟಿಸನ್ನು ಸ್ವೀಕರಿಸಿದ ಮೇಲೆ, ಸರ್ಕಾರವು ಸಂಬಂಧಿಸಿದ ನಿಯಂತ್ರಣಾ ಪ್ರಾಧಿಕಾರದೊಡನೆ ಸಮಾಲೋಚಿಸಿ, ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ಅಥವಾ ಅದರ ವ್ಯಾಸಂಗ ಯಾವುದೇ ಕ್ರಮವನ್ನು ಉದ್ದೇಶಿಸಿದ ದಿನಾಂಕದಿಂದ, ವಿಶ್ವವಿದ್ಯಾಲಯದಲ್ಲಿ ನಿಯತ ವ್ಯಾಸಂಗ ಕ್ರಮಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕೊನೆಯ ತಂಡ (ಬ್ಯಾಚ್) ತನ್ನ ವ್ಯಾಸಂಗ ಕ್ರಮವನ್ನು ಮುಗಿಸುವವರೆಗೆ ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು.

**59. ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು.**– (1) 58ನೇ ಪ್ರಕರಣದ (5)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ಅದರ ಆಡಳಿತಾತ್ಮಕ ವೆಚ್ಚಗಳನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಭರಿಸತಕ್ಕದ್ದು.

(2) ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ವಿಶ್ವವಿದ್ಯಾಲಯದ ವೆಚ್ಚವನ್ನು ಭರಿಸಲು 47, 48, 49 ಮತ್ತು 50ನೇ ಪ್ರಕರಣಗಳ ಅಡಿಯಲ್ಲಿ ಉಲ್ಲೇಖಿಸಲಾದ ನಿಧಿಯು ಸಾಕಷ್ಟು ಇಲ್ಲದಿದ್ದಲ್ಲಿ, ಅಂಥ ವೆಚ್ಚವನ್ನು ಸರ್ಕಾರವು, ವಿಶ್ವವಿದ್ಯಾಲಯದ ಸ್ವತ್ತುಗಳು ಮತ್ತು ಆಸ್ತಿಗಳನ್ನು ವಿಲೇ ಮಾಡುವ ಮೂಲಕ ಭರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಸಮಾಪನೆಯು ದುರ್ವ್ಯವಹರಣೆ ಅಥವಾ ದುರಾಡಳಿತದ ಕಾರಣಗಳಿಗಾಗಿ ಆಗಿದ್ದರೆ, ಸರ್ಕಾರವು ಅಂಥ ದುರ್ವ್ಯವಹಾರಕ್ಕೆ ಅಥವಾ ದುರಾಡಳಿತಕ್ಕೆ ಹೊಣೆಯಾಗಿರುವ ವ್ಯಕ್ತಿಗಳನ್ನು ಗುರುತಿಸುವ ಮತ್ತು ಅವರ ಮೇಲೆ ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ದಂಡನೆಯನ್ನು ವಿಧಿಸಲು ಸ್ವತಂತ್ರವಾಗಿರತಕ್ಕದ್ದು.

**60. ತೊಂದರೆಗಳ ನಿವಾರಣೆಗೆ ಅಧಿಕಾರ.**– (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಅಥವಾ ಆದೇಶದ ಮೂಲಕ ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಐದು ವರ್ಷಗಳು ಮುಕ್ತಾಯವಾದ ತರುವಾಯ ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಅಧಿಸೂಚನೆ ಅಥವಾ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

**61. ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ.**– (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ಹೊರಡಿಸಲಾದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಉಭಯ ಸದನಗಳು ಒಪ್ಪಿದರೆ ತದನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ದತಿಯು ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವನ್ನು ಉಂಟುಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಜಿ.ಕೆ. ಬೋರೇಗೌಡ**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು (ಪಿ7) (500 ಪ್ರತಿಗಳು)

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ - IV-A | ಬೆಂಗಳೂರು, ಸೋಮವಾರ, ಮಾರ್ಚ್ ೨೫, ೨೦೧೩ (ಚೈತ್ರ ೪, ಶಕ ವರ್ಷ ೧೯೩೪) | ನಂ. ೬೩೯ |
|---|---|---|
| Part - IV-A | Bangalore, Monday, March 25, 2013 (Chaithra 4, Shaka Varsha 1934) | No. 639 |

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಸಚಿವಾಲಯ

ಅಧಿಸೂಚನೆ

**ಸಂಖ್ಯೆ: ಸಂವ್ಯಶಾಇ 25 ಶಾಸನ 2013, ಬೆಂಗಳೂರು, ದಿನಾಂಕ: 25.03.2013**

ಜೆ.ಎಸ್.ಎಸ್. ವಿಜ್ಞಾನ ಮತ್ತು ತಂತ್ರಜ್ಞಾನ ವಿಶ್ವವಿದ್ಯಾಲಯ ವಿಧೇಯಕ, 2013 – ಇದಕ್ಕೆ 2013ರ ಮಾರ್ಚ್ ತಿಂಗಳ ಇಪ್ಪತ್ತೆರಡನೇ ದಿನಾಂಕದಂದು ಘನತೆವೆತ್ತ ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2013ರ ಕರ್ನಾಟಕ ಅಧಿನಿಯಮ ಸಂಖ್ಯೆ:43 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2013 ರ ಕರ್ನಾಟಕ ಅಧಿನಿಯಮ ಸಂಖ್ಯೆ:43**

(2013ರ ಮಾರ್ಚ್ ಮಾಹೆಯ ಇಪ್ಪತ್ತೈದನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಜೆ.ಎಸ್.ಎಸ್. ವಿಜ್ಞಾನ ಮತ್ತು ತಂತ್ರಜ್ಞಾನ ವಿಶ್ವವಿದ್ಯಾಲಯ ಅಧಿನಿಯಮ, 2013

(2013ರ ಮಾರ್ಚ್ ಮಾಹೆಯ ಇಪ್ಪತ್ತೆರಡನೇ ದಿನಾಂಕದಂದು ರಾಜ್ಯಪಾಲರ ಅನುಮತಿಯನ್ನು ಪಡೆಯಲಾಗಿದೆ)

ಸಾಮಾನ್ಯ, ತಾಂತ್ರಿಕ, ಆರೋಗ್ಯ, ವ್ಯವಸ್ಥಾಪನೆ, ಜೀವ ವಿಜ್ಞಾನ ಮತ್ತು ತತ್ಸಂಬಂಧಿ ವಲಯಗಳಲ್ಲಿ ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಉತ್ತೇಜಿಸಲು ಮತ್ತು ಕೈಗೊಳ್ಳಲು ಜೆ.ಎಸ್.ಎಸ್. ಮಹಾವಿದ್ಯಾಪೀಠ (ನೋಂ) ನ್ಯಾಸ, ಮೈಸೂರು ಇವರ ಮೂಲಕ ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದಕ್ಕಾಗಿ ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಸಾಮಾನ್ಯ, ತಾಂತ್ರಿಕ, ಆರೋಗ್ಯ, ವ್ಯವಸ್ಥಾಪನೆ, ಜೀವ ವಿಜ್ಞಾನಗಳು ಮತ್ತು ತತ್ಸಂಬಂಧಿ ವಲಯಗಳಲ್ಲಿ ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯದ ಶಿಕ್ಷಣದ ಪ್ರಗತಿಪರ ವಿಚಾರಗಳನ್ನು ಉತ್ತೇಜಿಸಲು ಮತ್ತು ಕೈಗೊಳ್ಳಲು ಜೆ.ಎಸ್.ಎಸ್. ಮಹಾವಿದ್ಯಾಪೀಠ (ನೋಂ) ನ್ಯಾಸ, ಮೈಸೂರು ಇವರ ಮೂಲಕ ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ನಾಲ್ಕನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

### ಅಧ್ಯಾಯ – I

### ಪ್ರಾರಂಭಿಕ

**1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.–** (1) ಈ ಅಧಿನಿಯಮವನ್ನು ಜೆ.ಎಸ್.ಎಸ್. ವಿಜ್ಞಾನ ಮತ್ತು ತಂತ್ರಜ್ಞಾನ ವಿಶ್ವವಿದ್ಯಾಲಯ ಅಧಿನಿಯಮ, 2013 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. ಪರಿಭಾಷೆಗಳು.**– ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,–

(ಎ) "ಶೈಕ್ಷಣಿಕ ಪರಿಷತ್ತು (ಅಕೆಡೆಮಿಕ್ ಕೌನ್ಸಿಲ್)" ಎಂದರೆ, 25ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿಸಲಾದ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು;

(ಬಿ) "ಕಾರ್ಯಸೂಚಿ ವಿಷಯಗಳು", ಎಂದರೆ, ಪರಿನಿಯಮಗಳಲ್ಲಿ ಹೆಸರಿಸಬಹುದಾದ ಮತ್ತು ಒಂದು ಸಭೆಯಲ್ಲಿ ಆ ವಿಷಯಗಳನ್ನು ಮತ್ತು ಕೆಲಾಪಗಳನ್ನು ಅನುಮೋದಿಸಬಹುದೆಂದು ತಮ್ಮ ಸಮ್ಮತಿ ಸೂಚಿಸಿ ಕುಲಾಧಿಪತಿಯವರು ಮುಂಚಿತವಾಗಿಯೇ ಲಿಖಿತ ಅನುಮೋದನೆಯನ್ನು ಕೊಟ್ಟಿದ್ದಾಗ ಮಾತ್ರವೇ ಸಂದರ್ಭಾನುಸಾರ ಪ್ರಬಂಧಕರ ಮಂಡಳಿ ಅಥವಾ ವ್ಯವಸ್ಥಾಪನಾ ಮಂಡಳಿ ಅಥವಾ ಯಾವುದೇ ಸಮಿತಿಯವರು ಕಾರ್ಯಸೂಚಿಯಲ್ಲಿ ಸೇರಿಸಬಹುದಾದ ಅಥವಾ ಸಭೆಯಲ್ಲಿ ಚರ್ಚೆಗೆ ತೆಗೆದುಕೊಂಡು ನಿರ್ಣಯವನ್ನು ಕೊಡಬಹುದಾದ ಎಲ್ಲಾ ವಿಷಯಗಳು ಮತ್ತು ಕಲಾಪಗಳು;

(ಸಿ) "ಪ್ರಬಂಧಕರ ಮಂಡಳಿ" ಎಂದರೆ, 23ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಪ್ರಬಂಧಕರ ಮಂಡಳಿ;

(ಡಿ) "ವ್ಯವಸ್ಥಾಪನಾ ಮಂಡಳಿ" ಎಂದರೆ 24ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದಂತೆ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿ ;

(ಇ) "ಕುಲಾಧಿಪತಿ", "ಕುಲಪತಿ", "ಸಹಕುಲಪತಿ" ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ ಮತ್ತು ಸಹಕುಲಪತಿ;

(ಎಫ್) "ಕ್ಯಾಂಪಸ್" ಎಂದರೆ, ಅದು ಎಲ್ಲಾದರೂ ಇರಲಿ ವಿಶ್ವವಿದ್ಯಾಲಯವು ಸ್ಥಾಪಿಸಿದ, ನಿರ್ವಹಿಸುವ ಒಂದು ಕ್ಯಾಂಪಸ್;

(ಜಿ) "ಸಮಿತಿಗಳು" ಎಂದರೆ, ಈ ಅಧಿನಿಯಮದಡಿಯಲ್ಲಿ ರೂಪಿಸಲಾದ ಸಮಿತಿಗಳು ಅಥವಾ ಸಂದರ್ಭಾನುಸಾರವಾಗಿ ವಿಶ್ವವಿದ್ಯಾಲಯದ ವಿವಿಧ ಕಾರ್ಯಕರ್ತರು ರಚಿಸಿರುವ ಸಮಿತಿಗಳು ಮತ್ತು ಅದರಲ್ಲಿ ಶೋಧನಾ ಸಮಿತಿ, ನಾಮನಿರ್ದೇಶನ ಸಮಿತಿ, ಹಣಕಾಸು ಸಮಿತಿ, ಹಣಕಾಸು ಪರಿಷತ್ತು ಮತ್ತು ಅಂಥ ಇತರ ಸಮಿತಿಗಳು ಒಳಗೊಳ್ಳುತ್ತವೆ;

(ಎಚ್) "ಘಟಕ ಕಾಲೇಜು" ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುತ್ತಿರುವ ಒಂದು ಕಾಲೇಜು ಅಥವಾ ಸಂಸ್ಥೆ;

(ಐ) "ಹಣಕಾಸು ಸಮಿತಿ" ಎಂದರೆ, 27ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಹಣಕಾಸು ಸಮಿತಿ;

(ಜೆ) "ಪ್ರಾಯೋಜಕ ನ್ಯಾಸ" ಎಂದರೆ ಭಾರತೀಯ ನ್ಯಾಸ ಅಧಿನಿಯಮ, 1882ರ ಅಡಿಯಲ್ಲಿ ನೋಂದಣಿಯಾದ ಜೆ.ಎಸ್.ಎಸ್. ಮಹಾವಿದ್ಯಾಪೀಠ (ನೋಂ) ನ್ಯಾಸ ;

(ಕೆ) "ಸರ್ಕಾರ" ಎಂದರೆ, ಕರ್ನಾಟಕ ಸರ್ಕಾರ;

(ಎಲ್) "ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳು" ಎಂದರೆ, ವಿಶ್ವವಿದ್ಯಾಲಯ ಅನುದಾನ ಆಯೋಗ, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು, ರಾಷ್ಟ್ರೀಯ ಬೋಧಕ ಶಿಕ್ಷಣ ಪರಿಷತ್ತು, ಭಾರತೀಯ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಪರಿಷತ್ತು, ಭಾರತೀಯ ಔಷಧ ವಿಜ್ಞಾನ ಪರಿಷತ್ತು, ರಾಷ್ಟ್ರೀಯ ಮೌಲ್ಯಮಾಪನ ಮತ್ತು ಅಧಿಮಾನ್ಯತಾ ಪರಿಷತ್ತು, ಭಾರತೀಯ ಕೃಷಿ ಸಂಶೋಧನಾ ಪರಿಷತ್ತು, ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಪರಿಷತ್ತು ಮುಂತಾದ ಉನ್ನತ ಶಿಕ್ಷಣದಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುವಂತೆ ನೋಡಿಕೊಳ್ಳುವುದಕ್ಕಾಗಿ ಗುಣಮಟ್ಟಗಳು ಮತ್ತು ಷರತ್ತುಗಳನ್ನು ವಿಧಿಸುವುದಕ್ಕಾಗಿ, ಕೇಂದ್ರ ಸರ್ಕಾರವು ಸ್ಥಾಪಿಸಿರುವ ಒಂದು ಸಂಸ್ಥೆ ಮತ್ತು ಇದರಲ್ಲಿ ಸರ್ಕಾರವೂ ಸೇರಿರುತ್ತದೆ;

(ಎಂ) "ನಿಯಮಿಸಲಾದುದು" ಎಂದರೆ, ಈ ಅಧಿನಿಯಮದಡಿಯಲ್ಲಿ ಸರ್ಕಾರವು ರಚಿಸಲಾದ ನಿಯಮಗಳ ಮೂಲಕ ನಿಯಮಿಸಲಾದುದು;

(ಎನ್) "ಒಂದು ಘಟಕ ಕಾಲೇಜಿಗೆ ಸಂಬಂಧಪಟ್ಟಂತೆ ಪ್ರಾಂಶುಪಾಲರು" ಎಂದರೆ, ಘಟಕ ಕಾಲೇಜಿನ ಮುಖ್ಯಸ್ಥರು ಮತ್ತು ಪ್ರಾಂಶುಪಾಲರು ಇಲ್ಲದಿದ್ದಲ್ಲಿ ಅಥವಾ ನೇಮಕವಾದ ಪ್ರಾಂಶುಪಾಲರ ಗೈರುಹಾಜರಿಯಲ್ಲಿ, ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ತಾತ್ಕಾಲಿಕವಾಗಿ ನೇಮಕಗೊಂಡಿರುವ ಉಪಪ್ರಾಂಶುಪಾಲರು ಅಥವಾ ಯಾವುದೇ ಇತರ ವ್ಯಕ್ತಿಯೂ ಇದರಲ್ಲಿ ಒಳಗೊಳ್ಳುತ್ತಾರೆ;

(ಒ) "ಕುಲಸಚಿವರು" ಎಂದರೆ, ವಿಶ್ವವಿದ್ಯಾಲಯದ ಕುಲಸಚಿವರು;

(ಪಿ) "ಪ್ರಾದೇಶಿಕ ಕೇಂದ್ರ" ಎಂದರೆ, ಯಾವುದೇ ಪ್ರದೇಶದಲ್ಲಿನ ಅಧ್ಯಯನ ಕೇಂದ್ರಗಳ ಕಾರ್ಯವನ್ನು ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ಮಾಡುವ ಉದ್ದೇಶಕ್ಕಾಗಿ ಮತ್ತು ಅಂಥ ಕೇಂದ್ರಕ್ಕೆ ಕಾರ್ಯಕಾರಿ ಪರಿಷತ್ತು ವಹಿಸಿಕೊಡಬಹುದಾದ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸುವುದಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಅಥವಾ ನಿರ್ವಹಿಸಿಕೊಂಡುಬರುವ ಒಂದು ಕೇಂದ್ರ;

(ಕ್ಯೂ) ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ "ಪ್ರಾಯೋಜಕ ಪ್ರಾಧಿಕಾರ" ಅಥವಾ "ಪ್ರಾಯೋಜಕ ಸಂಸ್ಥೆ" ಎಂದರೆ ಪ್ರಾಯೋಜಕ ನ್ಯಾಸ;

(ಆರ್) "ರಾಜ್ಯ" ಎಂದರೆ, ಕರ್ನಾಟಕ ರಾಜ್ಯ;

(ಎಸ್) "ಪರಿನಿಯಮಗಳು" ಮತ್ತು "ವಿನಿಯಮಗಳು" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಅನುಕ್ರಮವಾಗಿ ವಿಶ್ವವಿದ್ಯಾಲಯದ ಪರಿನಿಯಮಗಳು ಮತ್ತು ವಿನಿಯಮಗಳು;

(ಟಿ) "ಅಧ್ಯಯನ ಕೇಂದ್ರ" ಎಂದರೆ, ವಿದ್ಯಾರ್ಥಿಗಳಿಗೆ ಅಗತ್ಯವಾದ ಬುದ್ಧಿವಾದ, ಸಲಹೆಗಳನ್ನು ನೀಡುವ ಅಥವಾ ಇತರ ಯಾವುದೇ ನೆರವನ್ನು ನೀಡುವ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಮತ್ತು ನಿರ್ವಹಿಸಿಕೊಂಡುಬಂದ ಒಂದು ಕೇಂದ್ರ;

(ಯು) "ಅಧ್ಯಾಪಕರು" ಎಂದರೆ, ಒಬ್ಬ ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಒಂದು ಘಟಕ ಕಾಲೇಜಿನಲ್ಲಿ ಬೋಧಿಸುವುದಕ್ಕೆ ಅಥವಾ ಸಂಶೋಧನೆ ನಡೆಸುವುದಕ್ಕೆ ಅಥವಾ ಸಂಶೋಧನೆಗೆ ಮಾರ್ಗದರ್ಶನ ನೀಡುವುದಕ್ಕೆ ನೇಮಕವಾದ ಅಂಥ ಇತರ ವ್ಯಕ್ತಿ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗವು ನಿಯಮಿಸಿದ ಗುಣಮಟ್ಟಗಳಿಗೆ ಅನುಸಾರವಾಗಿ ಇರುವ ಘಟಕ ಕಾಲೇಜಿನ ಪ್ರಾಂಶುಪಾಲರು ಇದರಲ್ಲಿ ಒಳಗೊಳ್ಳುತ್ತಾರೆ;

(ವಿ) "ವಿಶ್ವವಿದ್ಯಾಲಯ ಅನುದಾನಗಳ ಆಯೋಗ" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) 4ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ಆಯೋಗ;

(ಡಬ್ಲ್ಯೂ) "ವಿಶ್ವವಿದ್ಯಾಲಯ" ಎಂದರೆ, ಈ ಅಧಿನಿಯಮದಡಿಯಲ್ಲಿ ಸ್ಥಾಪಿಸಿ ನಿಗಮಿತಗೊಳಿಸಲಾದ ಜೆ.ಎಸ್.ಎಸ್. ವಿಜ್ಞಾನ ಮತ್ತು ತಂತ್ರಜ್ಞಾನ ವಿಶ್ವವಿದ್ಯಾಲಯ;

(ಎಕ್ಸ್) "ಸಂದರ್ಶಕರು" ಎಂದರೆ, 13ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ವಿಶ್ವವಿದ್ಯಾಲಯದ ಸಂದರ್ಶಕರು.

## ಅಧ್ಯಾಯ- II

## ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

**3. ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ.**- (1) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಹಕ್ಕನ್ನು ಪ್ರಾಯೋಜಕ ನ್ಯಾಸವು ಹೊಂದಿರತಕ್ಕದ್ದು.

(2) ಪ್ರಾಯೋಜಕ ನ್ಯಾಸವು ರಾಜ್ಯ ಸರ್ಕಾರಕ್ಕೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವವನ್ನು ಸಲ್ಲಿಸತಕ್ಕದ್ದು.

(3) ಪ್ರಸ್ತಾವವು ಈ ಮುಂದಿನ ವಿವರಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಪ್ರಾಯೋಜಕ ನ್ಯಾಸದ ವಿವರಗಳೊಂದಿಗೆ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು;

(ii) ವಿಶ್ವವಿದ್ಯಾಲಯದ ವ್ಯಾಪ್ತಿ ಮತ್ತು ಸ್ಥಾನಮಾನ ಹಾಗೂ ಭೂಮಿಯ ಲಭ್ಯತೆ;

(iii) ಪ್ರಾರಂಭದ ದಿನಾಂಕದಿಂದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳಬೇಕೆಂದಿರುವ ಅಧ್ಯಯನ ಮತ್ತು ಸಂಶೋಧನಾ ಕಾರ್ಯಕ್ರಮಗಳ ಸ್ವರೂಪ ಮತ್ತು ಬಗೆಗಳು;

(iv) ಪ್ರಾರಂಭಿಸಬೇಕೆಂದು ಪ್ರಸ್ತಾಪಿಸಿರುವ ವ್ಯಾಸಂಗ ವಿಭಾಗಗಳು (ಫ್ಯಾಕಲ್ಟಿಗಳು), ಅಧ್ಯಯನ ಕ್ರಮಗಳು ಮತ್ತು ಸಂಶೋಧನೆಗಳ ಸ್ವರೂಪ;

(v) ಕಟ್ಟಡಗಳು, ಸಲಕರಣೆಗಳು ಮತ್ತು ರಚನಾ ಸೌಕರ್ಯಗಳನ್ನು ಒದಗಿಸುವಂಥ ಕ್ಯಾಂಪಸ್ ಅಭಿವೃದ್ಧಿ;

(vi) ಪ್ರಾರಂಭದ ದಿನಾಂಕದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಗಾಗಿ ಬಂಡವಾಳ ವೆಚ್ಚದ ಹಂತಗಳು;

(vii) ಬಾಬುವಾರು ಆವರ್ತಕ ವೆಚ್ಚ, ಆರ್ಥಿಕ ಮೂಲಗಳು ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ತಗಲುವ ಅಂದಾಜು ವೆಚ್ಚ;

(viii) ಸಂಪನ್ಮೂಲ ಸಂಗ್ರಹಣೆಗಾಗಿ ಯೋಜನೆ ಮತ್ತು ಅದಕ್ಕೆ ಬಂಡವಾಳದಿಂದ ತಗಲುವ ವೆಚ್ಚ ಹಾಗೂ ಪ್ರತಿಯೊಂದು ಮೂಲಕ್ಕೂ ಮರು ಸಂದಾಯ ಮಾಡುವ ರೀತಿ;

(ix) ವಿದ್ಯಾರ್ಥಿಗಳಿಂದ ಶುಲ್ಕ ವಸೂಲು ಮಾಡಿ ಆಂತರಿಕವಾಗಿ ನಿಧಿ ಸಂಗ್ರಹಿಸುವ ಯೋಜನೆ, ಸಲಹಾ ಸೇವೆ ಮತ್ತು ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಿಗೆ ಸಂಬಂಧಿಸಿದ ಇತರ ಚಟುವಟಿಕೆಗಳಿಂದ ನಿರೀಕ್ಷಿತ ವರಮಾನಗಳು ಮತ್ತು ಇತರ ನಿರೀಕ್ಷಿತ ವರಮಾನಗಳು;

(x) ಘಟಕವೊಂದಕ್ಕೆ ತಗಲುವ ವೆಚ್ಚದ ವಿವರಗಳು, ಆರ್ಥಿಕವಾಗಿ ದುರ್ಬಲವಾದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕ, ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿ ವೇತನದಲ್ಲಿ ನೀಡುವ ರಿಯಾಯಿತಿ ಅಥವಾ ವಿನಾಯತಿಯ ಪರಿಮಿತಿಯ ವಿವರಗಳನ್ನು ಮತ್ತು ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳಿಗೆ ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳು ಪ್ರಾಯೋಜಿಸಿದ ವಿದ್ಯಾರ್ಥಿಗಳಿಗೆ

ಮತ್ತು ಭಾರತವನ್ನುಳಿದು ಇತರ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ವಿಧಿಸತಕ್ಕ ಶುಲ್ಕದ ದರಗಳು ಬೇರೆ ಬೇರೆ ಇದ್ದಲ್ಲಿ ಅವುಗಳನ್ನು ಸೂಚಿಸುವ ಶುಲ್ಕ ರಚನೆಯ ವಿವರಗಳು;

(xi) ಸಂಬಂಧಪಟ್ಟ ವಿದ್ಯಾ ವಿಭಾಗದಲ್ಲಿ ಎಷ್ಟು ವರ್ಷಗಳ ಅನುಭವ ಮತ್ತು ಪರಿಣಿತಿಯನ್ನು ಪ್ರಾಯೋಜಕ ನ್ಯಾಸವು ದೊರಕಿಸಿಕೊಡಲಿದೆ ಹಾಗೂ ಅದರ ಹಣಕಾಸಿನ ಸಂಪನ್ಮೂಲಗಳು;

(xii) ವಿಶ್ವವಿದ್ಯಾಲಯದಲ್ಲಿರುವ ಅಧ್ಯಯನ ಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕಾಗಿ ಇರುವ ವ್ಯವಸ್ಥೆ;

(xiii) ವಿಶ್ವವಿದ್ಯಾಲಯವು ಸ್ಥಾಪನೆಯಾಗುವುದಕ್ಕೆ ಮೊದಲು ನೆರವೇರಿಸಬೇಕೆಂದು ರಾಜ್ಯ ಸರ್ಕಾರವು ಅಗತ್ಯಪಡಿಸಬಹುದಾದ ಅಂಥ ಇತರ ಷರತ್ತುಗಳ ನೆರವೇರಿಕೆಯ ಹಂತ.

(4) ಪ್ರಾಯೋಜಕ ನ್ಯಾಸದಿಂದ ಸ್ವೀಕರಿಸಿದ ಪ್ರಸ್ತಾವಗಳನ್ನು ಪರೀಕ್ಷಿಸಲು ರಾಜ್ಯ ಸರ್ಕಾರವು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಪದನಿಮಿತ್ತ ಸದಸ್ಯರಾದ ಮೂರು ಸದಸ್ಯರುಗಳನ್ನು ಒಳಗೊಂಡ ಒಂದು ಶೋಧನಾ ಸಮಿತಿಯನ್ನು ರಚಿಸತಕ್ಕದ್ದು ಮತ್ತು ಅದು ವಿಶ್ವವಿದ್ಯಾಲಯದ ಸ್ಥಾಪನೆಗೆ ರಾಜ್ಯ ಸರ್ಕಾರಕ್ಕೆ ಶಿಫಾರಸ್ಸನ್ನು ಮಾಡತಕ್ಕದ್ದು.

**4. ವಿಶ್ವವಿದ್ಯಾಲಯದ ಸ್ಥಾಪನೆ.–** (1) ರಾಜ್ಯ ಸರ್ಕಾರವು ಶೋಧನಾ ಸಮಿತಿಯು ಮಾಡಿದ ಶಿಫಾರಸ್ಸುಗಳನ್ನು ಪರಿಶೀಲಿಸಿದ ತರುವಾಯ ಮತ್ತು ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ,–

(i) ನ್ಯಾಸವು ಸಾಕಷ್ಟು ಮೂಲ ಸೌಕರ್ಯದೊಂದಿಗೆ ವಿಶ್ವವಿದ್ಯಾಲಯವೊಂದನ್ನು ನಡೆಸಲು ಸಮರ್ಥವಾಗಿದೆ ಎಂದು ಅದು ಮನಗಂಡರೆ;

(ii) ಪ್ರದೇಶಕ್ಕನುಸಾರವಾಗಿ ಕೆಳಗೆ ನಿರ್ದಿಷ್ಟ ಪಡಿಸಿದ ವ್ಯಾಪ್ತಿಗೆ ಭೂಮಿಯ ಒಡೆತನವನ್ನು ಹೊಂದಿರತಕ್ಕದ್ದು, ಎಂದರೆ:–

(ಎ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯೊಳಗಿದ್ದರೆ ಇಪ್ಪತ್ತೈದು ಎಕರೆಗಳು;

(ಬಿ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯಿಂದ ಹೊರಗೆ ಇದ್ದು, ಆದರೆ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಪ್ರದೇಶದ ಒಳಗೆ ಇದ್ದರೆ ನಲವತ್ತು ಎಕರೆಗಳು;

(ಸಿ) ಭೂಮಿಯು (ಎ) ಮತ್ತು (ಬಿ) ಖಂಡಗಳಲ್ಲಿ ನಿರ್ದಿಷ್ಟಪಡಿಸಿದ ಸ್ಥಳಗಳನ್ನು ಹೊರತುಪಡಿಸಿದ್ದರೆ ಅರವತ್ತು ಎಕರೆಗಳಿಗಿಂತ ಕಡಿಮೆ ಇರತಕ್ಕದ್ದಲ್ಲ.

ಮೇಲೆ ನಿರ್ದಿಷ್ಟಪಡಿಸಿದ ಭೂಮಿಯು ಏಕ ಘಟಕ (ಸಿಂಗಲ್ ಬ್ಲಾಕ್) ದಲ್ಲಿರತಕ್ಕದ್ದು ಮತ್ತು ಇದು ಸಂಬಂಧಪಟ್ಟ ನ್ಯಾಸ/ಪ್ರತಿಷ್ಠಾನ/ಸಂಸ್ಥೆ/ವಿಶ್ವವಿದ್ಯಾಲಯದ ಹೆಸರಿನಲ್ಲಿರತಕ್ಕದ್ದು. 3ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ಅಗತ್ಯಪಡಿಸಲಾದಂತೆ ಒದಗಿಸಿದ ವಿವರಗಳ ಆಧಾರದ ಮೇಲೆ ಸರ್ಕಾರವು 47ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಬೇಕೆಂದು ನ್ಯಾಸಕ್ಕೆ ನಿರ್ದೇಶನ ನೀಡಬಹುದು.

(2) ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಸ್ಥಾಪನೆಯ ತರುವಾಯ, ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, "ಜೆ.ಎಸ್.ಎಸ್. ವಿಜ್ಞಾನ ಮತ್ತು ತಂತ್ರಜ್ಞಾನ ವಿಶ್ವವಿದ್ಯಾಲಯ" ಎಂಬ ಹೆಸರಿನ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ರಾಜ್ಯದಲ್ಲಿ ಸ್ಥಾಪಿಸುವುದಕ್ಕೆ ಮಂಜೂರಾತಿಯನ್ನು ನೀಡಬಹುದು.

(3) ವಿಶ್ವವಿದ್ಯಾಲಯದ ಕೇಂದ್ರ ಕಾರ್ಯಸ್ಥಾನವು ಮೈಸೂರಿನಲ್ಲಿ ಇರತಕ್ಕದ್ದು. ವಿಶ್ವವಿದ್ಯಾಲಯವು ತನ್ನ ಕ್ಯಾಂಪಸ್ಸುಗಳನ್ನು ಅಥವಾ ಪ್ರಾದೇಶಿಕ ಕೇಂದ್ರಗಳನ್ನು, ಅಧ್ಯಯನ ಕೇಂದ್ರಗಳನ್ನು ಕರ್ನಾಟಕದ ಯಾವುದೇ ಭಾಗದಲ್ಲಿ ಹೊಂದಿರತಕ್ಕದ್ದು ಮತ್ತು ಆ ಬಗ್ಗೆ ರಾಜ್ಯ ಸರ್ಕಾರದ ಪೂರ್ವಾನುಮತಿಯನ್ನು ಪಡೆದುಕೊಳ್ಳುವುದಕ್ಕೊಳಪಟ್ಟು ಹಾಗೂ ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗನುಸಾರವಾಗಿ ಹೊಂದಿರತಕ್ಕದ್ದು.

(4) ಮೊದಲ ಕುಲಾಧಿಪತಿಯವರು, ಮೊದಲ ಕುಲಪತಿಯವರು, ಪ್ರಬಂಧಕ ಮಂಡಳಿಯ ಮೊದಲ ಸದಸ್ಯರುಗಳು, ವ್ಯವಸ್ಥಾಪನಾ ಮಂಡಳಿಯ ಹಾಗೂ ಶೈಕ್ಷಣಿಕ ಪರಿಷತ್ತಿನ ಮೊದಲ ಸದಸ್ಯರುಗಳು ಮತ್ತು ಇನ್ನು ಮುಂದೆ, ಅಂಥ ಅಧಿಕಾರಿಗಳು ಅಥವಾ ಸದಸ್ಯರುಗಳಾಗಬಹುದಾದಂಥ ಎಲ್ಲಾ ವ್ಯಕ್ತಿಗಳು, ಅಂಥ ಪದ ಅಥವಾ ಸದಸ್ಯತ್ವವನ್ನು ಹೊಂದಿರುವುದು ಮುಂದುವರೆಯುವವರೆಗೆ, ಒಂದು ನಿಗಮಿತ ನಿಕಾಯವನ್ನು ರಚಿಸತಕ್ಕದ್ದು. ಮತ್ತು ಅದು ವಿಶ್ವವಿದ್ಯಾಲಯದ ಹೆಸರಿನಲ್ಲಿ ದಾವೆ ಹೂಡಬಹುದು ಮತ್ತು ದಾವೆಗೊಳಗಾಗಬಹುದು.

(5) (2)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯವು ಸ್ಥಾಪನೆಗೆ ಮಂಜೂರಾತಿಯಾದ ಮೇಲೆ, ವಿಶ್ವವಿದ್ಯಾಲಯದ ಉದ್ದೇಶಕ್ಕಾಗಿ, ನ್ಯಾಸವು ಆರ್ಜಿಸಿದ, ಸೃಜಿಸಿದ, ಏರ್ಪಾಟು ಮಾಡಿಕೊಂಡ ಅಥವಾ ಕಟ್ಟಲ್ಪಟ್ಟ ಭೂಮಿ ಮತ್ತು ಇತರ ಸ್ಥಿರ ಮತ್ತು ಚರ ಸ್ವತ್ತು, ವಿಶ್ವವಿದ್ಯಾಲಯದಲ್ಲಿ ನಿಹಿತವಾಗಿರತಕ್ಕದ್ದು.

(6) ವಿಶ್ವವಿದ್ಯಾಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದ ಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂಥ ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

(7) ವಿಶ್ವವಿದ್ಯಾಲಯದಲ್ಲಿನ ಭೂಮಿ, ಕಟ್ಟಡ ಮತ್ತು ಇತರ ಸ್ವತ್ತುಗಳನ್ನು ವಿಶ್ವವಿದ್ಯಾಲಯದ ಉದ್ದೇಶಗಳಿಗೆ ಆನುಷಂಗಿಕವಾಗಿರುವುದನ್ನು ಹೊರತುಪಡಿಸಿ ಇತರ ಯಾವುದೇ ಉದ್ದೇಶಕ್ಕಾಗಿ ಬಳಸತಕ್ಕದ್ದಲ್ಲ.

**5. ಅನುದಾನಗಳು ಮತ್ತು ಹಣಕಾಸು ನೆರವು.–** ವಿಶ್ವವಿದ್ಯಾಲಯವು ಸ್ವಂತ ಧನಮೂಲ ಉಳ್ಳದ್ದಾಗಿರತಕ್ಕದ್ದು ಮತ್ತು ರಾಜ್ಯದಿಂದ ಅಥವಾ ರಾಜ್ಯದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಇತರ ಸಂಸ್ಥೆ ಅಥವಾ ನಿಗಮದಿಂದ ಯಾವುದೇ ನಿರ್ವಹಣಾ ಸಹಾಯ ಅನುದಾನ ಅಥವಾ ಯಾವುದೇ ಹಣಕಾಸು ನೆರವನ್ನು ಹಕ್ಕಿನಿಂದ ಕೇಳತಕ್ಕದ್ದಲ್ಲ ಅಥವಾ ಅದನ್ನು ಪಡೆಯಲು ಹಕ್ಕನ್ನು ಹೊಂದಿರತಕ್ಕದ್ದಲ್ಲ:

ಪರಂತು, ರಾಜ್ಯವು,–

(ಎ) ಇತರ ರಾಜ್ಯ ಸರ್ಕಾರದ ಸಂಘಟನೆಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿರುವಂಥದ್ದೇ ಸಂಶೋಧನೆ, ಅಭಿವೃದ್ಧಿ ಮತ್ತಿತರ ಚಟುವಟಿಕೆಗಳಿಗಾಗಿ; ಅಥವಾ

(ಬಿ) ರಾಜ್ಯ ಸರ್ಕಾರದಿಂದ ನೆರವನ್ನು ಪಡೆಯುವ ಯಾವುದೇ ನಿರ್ದಿಷ್ಟ ಸಂಶೋಧನೆ ಅಥವಾ ಕಾರ್ಯಕ್ರಮಗಳಿಗಾಗಿ; ಮತ್ತು

(ಸಿ) ರಾಜ್ಯ ಕಾರ್ಯನೀತಿಯ ಬದಲಾವಣೆಗೆ ಒಳಪಟ್ಟು ಅಥವಾ ಅನ್ಯಥಾ ಇದೇ ಬಗೆಯ ವಿಶ್ವವಿದ್ಯಾಲಯಗಳಿಗೆ ಅವಕಾಶವನ್ನು ಕಲ್ಪಿಸುವುದಕ್ಕೆ ಅಥವಾ ಅವುಗಳ ಪ್ರಯೋಜನಕ್ಕಾಗಿ,

– ಅನುದಾನದ ಮೂಲಕ ಅಥವಾ ಅನ್ಯಥಾ ಹಣಕಾಸು ಬೆಂಬಲವನ್ನು ಒದಗಿಸಬಹುದು:

ಮತ್ತು ಪರಂತು, ವಿಶ್ವವಿದ್ಯಾಲಯವು, ಯಾವುದೇ ಇತರ ಮೂಲದಿಂದ ಯಾವುದೇ ಆರ್ಥಿಕ ನೆರವನ್ನು ಸ್ವೀಕರಿಸಬಹುದು.

**6. ಘಟಕ ಕಾಲೇಜು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಅಥವಾ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದಕ್ಕೆ ಅಧಿಕಾರ.–** ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಐದು ವರ್ಷಗಳನ್ನು ಪೂರ್ಣಗೊಳಿಸಿದ ನಂತರ, ವಿಶ್ವವಿದ್ಯಾಲಯ ಅನುದಾನ ಆಯೋಗದ ಮತ್ತು ಇತರ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ಗುಣಮಟ್ಟಗಳಿಗೆ ಒಳಪಟ್ಟು, ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ, ವಿಶ್ವವಿದ್ಯಾಲಯವು, ರಾಜ್ಯದಲ್ಲಿ ತನಗೆ ಸೂಕ್ತವೆನಿಸುವಂಥ ಸ್ಥಳಗಳಲ್ಲಿ ಘಟಕ ಕಾಲೇಜುಗಳು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದಿರಬಹುದು.

**7. ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು.–** ವಿಶ್ವವಿದ್ಯಾಲಯವು, ತನ್ನ ಭವಿಷ್ಯದ್‌ದೃಷ್ಟಿ ಮತ್ತು ಧ್ಯೇಯೋದ್ದೇಶಗಳನ್ನು ಸಾಧಿಸಲು ಈ ಮುಂದಿನಂತೆ ವಿವಿಧ ಬಗೆಯ ಕಾರ್ಯತಂತ್ರಗಳನ್ನು ಕೈಗೊಳ್ಳಬಹುದು:–

(i) ತಾಂತ್ರಿಕತೆ, ಆರೋಗ್ಯ, ವ್ಯವಸ್ಥಾಪನೆ, ಜೀವ ವಿಜ್ಞಾನಗಳು ಮತ್ತು ಸಂಬಂಧಿತ ವಲಯಗಳಲ್ಲಿ ಸ್ನಾತಕೋತ್ತರ, ಡಾಕ್ಟೊರಲ್ ಮತ್ತು ಪೋಸ್ಟ್ ಡಾಕ್ಟೊರಲ್ ಕೋರ್ಸುಗಳಿಗೆ ಮುಂದುವರಿಯುವ ಮತ್ತು ಅವುಗಳನ್ನು ಒಳಗೊಳ್ಳುವ ವಿಶ್ವವಿದ್ಯಾಲಯ ಶಿಕ್ಷಣದಲ್ಲಿ ಪ್ರಗತಿಯನ್ನು ಮತ್ತು ಅನ್ವೇಷಣೆಯನ್ನು ಬೆಂಬಲಿಸುವುದು, ಪ್ರೋತ್ಸಾಹಿಸುವುದು ಮತ್ತು ಕೈಗೊಳ್ಳುವುದು ಹಾಗೂ ಈ ಕ್ಷೇತ್ರಗಳಲ್ಲಿ ಸಲಹೆಯನ್ನೂ ಒಳಗೊಂಡಂತೆ ಸಂಶೋಧನೆ, ಪ್ರಗತಿ ಮತ್ತು ಪ್ರಸಾರಕ್ಕೆ ಅವಕಾಶವನ್ನು ಕಲ್ಪಿಸುವುದು;

(ii) ವಿದ್ಯಾರ್ಥಿಗಳಿಗೆ, ಬೋಧಕ ವೃಂದದ (ಫ್ಯಾಕಲ್ಟಿ) ಸದಸ್ಯರಿಗೆ ಮತ್ತು ಇತರರಿಗೆ ನಿರ್ದಿಷ್ಟ ಶೈಕ್ಷಣಿಕ ಮತ್ತು ಸಂಶೋಧನಾ ಕಾರ್ಯಕ್ರಮಗಳನ್ನು, ತರಬೇತಿ ಕಾರ್ಯಕ್ರಮಗಳನ್ನು ಮತ್ತು ವಿನಿಮಯ ಕಾರ್ಯಕ್ರಮಗಳನ್ನು ಪರಿಕಲ್ಪಿಸಲು, ವಿನ್ಯಾಸಗೊಳಿಸಲು, ಅಭಿವೃದ್ಧಿಪಡಿಸಲು ಇತರ ಯಾವುದೇ ವಿಶ್ವವಿದ್ಯಾಲಯಗಳು, ಸಂಶೋಧನಾ ಸಂಸ್ಥೆಗಳು, ಲಾಭರಹಿತ ಸಂಸ್ಥೆಗಳು, ಕೈಗಾರಿಕಾ ಸಂಸ್ಥೆಗಳು, ವೃತ್ತಿಪರ ಸಂಸ್ಥೆಗಳು ಅಥವಾ ಇತರ ಸಂಸ್ಥೆಗಳೊಂದಿಗೆ ಸಹಯೋಗವನ್ನು ಹೊಂದುವುದು;

(iii) ರಾಜ್ಯ ಸರ್ಕಾರದ ಪೂರ್ವ ಅನುಮೋದನೆಯೊಡನೆ, ಯಾವುದೇ ಸಂಸ್ಥೆಯೊಂದಿಗೆ ಸಹಯೋಗ ಹೊಂದಿ ಸಂಶೋಧನೆಯನ್ನು ಮತ್ತು ಹೊಸತನವನ್ನು ಬೆಳಕಿಗೆ ತರುವುದು;

(iv) ತಾನು ಸೂಕ್ತವೆಂದು ಭಾವಿಸಬಹುದಾದಂತೆ, ಕಲಿಕೆಯ ಅಂಥ ಶಾಖೆಗಳಲ್ಲಿ ಬೋಧನಾ ಮತ್ತು ಸಂಶೋಧನಾ ಸೌಲಭ್ಯಗಳನ್ನು ಒದಗಿಸಿ ಜ್ಞಾನ ಪ್ರಸಾರ ಮಾಡುವುದು ಮತ್ತು ಅದನ್ನು ಮುಂದುವರೆಸುವುದು ಹಾಗೂ ವಿಶೇಷವಾಗಿ ತಾಂತ್ರಿಕ, ಆರೋಗ್ಯ, ವ್ಯವಸ್ಥಾಪನೆ, ಜೀವ ವಿಜ್ಞಾನಗಳು ಮತ್ತು ಸಂಬಂಧಿತ ಕೋರ್ಸುಗಳಲ್ಲಿ ಸಮಗ್ರ ವ್ಯಾಸಂಗ ವಿಷಯಗಳಿಗಾಗಿ ವಿಶೇಷ ಉಪಬಂಧ ಕಲ್ಪಿಸುವುದು ಮತ್ತು ವಿಶ್ವವಿದ್ಯಾಲಯದಲ್ಲಿ ಅಂತರವಿದ್ಯಾವಿಷಯಗಳ ಅಧ್ಯಯನ ಮತ್ತು ಸಂಶೋಧನೆಗೆ ಉತ್ತೇಜನ ನೀಡುವುದಕ್ಕಾಗಿ ಸೂಕ್ತ ಕ್ರಮ ಕೈಗೊಳ್ಳುವುದು;

(v) ಇಂಜಿನಿಯರಿಂಗ್ ಪರಿಹಾರಗಳನ್ನೊದಗಿಸುವ ಭವಿಷ್ಯದ ಸಮರ್ಥವಾದ ತಾಂತ್ರಿಕತೆಗಳ ಸಂಶೋಧನೆಯೊಂದಿಗೆ ಮತ್ತು ತಾಂತ್ರಿಕ ವ್ಯವಹಾರ ಮತ್ತು ಬೆಳೆಯುತ್ತಿರುವ ತಾಂತ್ರಿಕತೆಗೆ ಬೆಂಬಲದೊಂದಿಗೆ ಉನ್ನತ ತಾಂತ್ರಿಕ ಮತ್ತು ವೃತ್ತಿಪರ ಕೈಗಾರಿಕೆಗಳ ಬೇಡಿಕೆಗಳನ್ನು ಈಡೇರಿಸುವುದು;

(vi) ಉನ್ನತ ಕಲಿಕೆಗೆ ಪ್ರವೇಶಾವಕಾಶಗಳನ್ನು ಮತ್ತು ನ್ಯಾಯಸಮ್ಮತತೆಗೆ ಉತ್ತೇಜನ ನೀಡುವ ದೃಷ್ಟಿಯಿಂದ, ಕಲಿಕೆಯ ವಿಧಾನಗಳು ಮತ್ತು ಸ್ಥಳಗಳು, ವ್ಯಾಸಂಗ ಕ್ರಮಗಳ ಸಂಯೋಜನೆ, ದಾಖಲಾತಿಗಾಗಿ ಅರ್ಹತೆ, ಪ್ರವೇಶದ ವಯಸ್ಸು, ಪರೀಕ್ಷೆಯನ್ನು ನಡೆಸುವುದು ಮತ್ತು ಕಾರ್ಯಕ್ರಮಗಳ ನಿರ್ವಹಣೆಗೆ ಸಂಬಂಧಿಸಿದಂತೆ ನಮ್ಯವಾದ (ಫ್ಲೆಕ್ಸಿಬಲ್) ಮತ್ತು ಮುಕ್ತವಾದ, ವಿಶ್ವವಿದ್ಯಾಲಯ ಮಟ್ಟದ ಶಿಕ್ಷಣದ ಅನ್ವೇಷಣಾ ಪದ್ಧತಿಯನ್ನು ಅಳವಡಿಸುವುದು ಹಾಗೂ ಜ್ಞಾನದ ಹೊಸ ಕ್ಷೇತ್ರಗಳಲ್ಲಿ ಉತ್ಕೃಷ್ಟತೆಗೆ ಪ್ರೋತ್ಸಾಹಿಸುವುದು, ಶೈಕ್ಷಣಿಕ ಮತ್ತು ಸಮನ್ವಯ ಕಲಿಕೆ, ಇವೆರೆಡಕ್ಕೂ ಸಮನಾದ ಪ್ರಾಮುಖ್ಯತೆಯನ್ನು ನೀಡುವುದು;

(vii) ಗುಣಮಟ್ಟದ ಶಿಕ್ಷಣಕ್ಕಾಗಿ ಕೊಡುಗೆಯನ್ನು ನೀಡಲು ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಸಂಪನ್ಮೂಲ ಕೇಂದ್ರಗಳನ್ನು ಅಭಿವೃದ್ಧಿಪಡಿಸುವುದು;

(viii) ಕರ್ನಾಟಕದಲ್ಲಿ ವಿವಿಧ ಸ್ಥಳಗಳಲ್ಲಿ ಕ್ಯಾಂಪಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳು ಮತ್ತು ಸಂಯೋಜಿತ ಕಾಲೇಜುಗಳನ್ನು ಸ್ಥಾಪಿಸುವುದು ಮತ್ತು ತಾಂತ್ರಿಕತೆ, ವೃತ್ತಿಪರತೆ, ಸಾಮಾನ್ಯ ಶಿಕ್ಷಣ ಮತ್ತು ಸಮಾಜ ಮತ್ತು ಮಾನವ ಅಭಿವೃದ್ಧಿಯಲ್ಲಿ ಶೈಕ್ಷಣಿಕ ಬದಲಾವಣೆಗೆ ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಕೊಡುಗೆ ನೀಡುವುದು ಮತ್ತು ಜ್ಞಾನವನ್ನು ಅಭಿವೃದ್ಧಿಪಡಿಸುವುದು;

(ix) ಮೌಲ್ಯಮಾಪನದ ವಿವಿಧ ಆಧುನಿಕ ವಿಧಾನಗಳ ಮೂಲಕ ಮಾಡಿದ ಮೌಲ್ಯಮಾಪನಕ್ಕೆ ಅನುಸಾರವಾಗಿ ಶಿಕ್ಷಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದುದರ ಆಧಾರದ ಮೇಲೆ ನೀಡಲು ಪದವಿಗಳನ್ನು, ಡಿಪ್ಲೋಮೋಗಳನ್ನು, ಪ್ರಮಾಣಪತ್ರಗಳನ್ನು ಮತ್ತು ಯಶೋಪತ್ರ ಪ್ರದಾನದಂಥ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(x) ಉಪನ್ಯಾಸ ಮಾಲಿಕೆಗಳು, ವಿಚಾರ ಸಂಕಿರಣಗಳು, ಸಮ್ಮೇಳನಗಳು, ಕಾರ್ಯಾಗಾರ ಶಿಕ್ಷಣ ಕಾರ್ಯಕ್ರಮಗಳು, ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳು, ಪ್ರಕಟಣೆಗಳು ಮತ್ತು ತರಬೇತಿ ಕಾರ್ಯಕ್ರಮಗಳು ಮತ್ತು ಕಾರ್ಯಸೂಚಿಗಳ ಮೂಲಕ ಜ್ಞಾನ ಪ್ರಸಾರ ಮಾಡುವುದು ಮತ್ತು ಶಿಕ್ಷಣ ಮತ್ತು ತತ್ಸಂಬಂಧಿತ ಅಭಿವೃದ್ಧಿ ಕ್ಷೇತ್ರಗಳ ವಿಷಯಗಳ ಬಗ್ಗೆ ಸಾರ್ವಜನಿಕ ಚರ್ಚೆಯನ್ನು ಏರ್ಪಡಿಸುವುದು;

(xi) ರಾಜ್ಯ ಸರ್ಕಾರದ ಪೂರ್ವ ಅನುಮತಿಯೊಂದಿಗೆ, ಉತ್ತಮ ಗುಣಮಟ್ಟದ ಇತರ ಯಾವುವೇ ವಿಶ್ವವಿದ್ಯಾಲಯಗಳೊಂದಿಗೆ ಸಹಭಾಗಿಗಳಾಗಿ ವಿಶ್ವವಿದ್ಯಾಲಯದ ಬೋಧಕ ವೃಂದ (ಫ್ಯಾಕಲ್ಟಿ) ಮತ್ತು ಸಂಶೋಧಕರ ಅಭಿವೃದ್ಧಿ ಮತ್ತು ತರಬೇತಿಗಾಗಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು;

(xii) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದಕ್ಕಾಗಿ ಮತ್ತು ಉತ್ತೇಜಿಸುವುದಕ್ಕಾಗಿ ಅವಶ್ಯಕವಾದ ಮತ್ತು ಯುಕ್ತವಾದ ಕ್ರಮಗಳನ್ನು ಕೈಗೊಳ್ಳುವುದು;

(xiii) ಭಾರತದಲ್ಲಿ ಶಿಕ್ಷಣ ಮತ್ತು ಇತರ ಅಭಿವೃದ್ಧಿ ವಲಯಗಳನ್ನು ವಿಸ್ತರಿಸುವುದಕ್ಕಾಗಿ ಸರ್ಕಾರವು ಅನುಮೋದಿಸಬಹುದಾದಂತೆ ಯಾವುವೇ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದು.

**8. ವಿಶ್ವವಿದ್ಯಾಲಯದ ಅಧಿಕಾರಗಳು.**– ವಿಶ್ವವಿದ್ಯಾಲಯವು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗೆ ಅನುಸಾರವಾಗಿ ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿರ್ಧರಿಸಬಹುದಾದಂತೆ ಕ್ಯಾಂಪಸ್ಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಕರ್ನಾಟಕದಲ್ಲಿ ಸ್ಥಾಪಿಸುವುದು ಮತ್ತು ನಿರ್ವಹಿಸುವುದು;

(ii) ವಿಶ್ವವಿದ್ಯಾಲಯದ ಉದ್ದೇಶವನ್ನು ಕಾರ್ಯರೂಪಕ್ಕೆ ತರುವಲ್ಲಿ ಅಗತ್ಯವಾಗಬಹುದಾದ ಅಥವಾ ಕಾರ್ಯಸಾಧ್ಯವಾಗಬಹುದಾದ ಎಲ್ಲಾ ಅಂಥ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು;

(iii) ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಮತ್ತು ಷರತ್ತುಗಳಿಗೊಳಪಟ್ಟು ಪದವಿಗಳು ಅಥವಾ ಇತರೆ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರದಾನಮಾಡುವುದು;

(iv) ಪರಿನಿಯಮಗಳನ್ವಯ ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿ ವೇತನಗಳು ಮತ್ತು ಬಹುಮಾನಗಳು, ಅವಾರ್ಡುಗಳು, ಪಾರಿತೋಷಕಗಳು ಇತ್ಯಾದಿಗಳನ್ನು ಸ್ಥಾಪಿಸುವುದು ಮತ್ತು ನೀಡುವುದು;

(v) ಪರಿನಿಯಮಗಳಲ್ಲಿ ಅಥವಾ ಸಂದರ್ಭಾನುಸಾರವಾಗಿ ನಿಯಮಗಳಲ್ಲಿ ನಿಗದಿಪಡಿಸಬಹುದಾದ ಅಂಥ ಶುಲ್ಕಗಳು, ಬಿಲ್ಲುಗಳು, ಖರೀದಿ ಪಟ್ಟಿಗಳನ್ನು ಕೇಳಿಪಡೆದುಕೊಳ್ಳುವುದು ಮತ್ತು ಸ್ವೀಕರಿಸುವುದು ಹಾಗೂ ಚಾರ್ಜುಗಳನ್ನು ವಸೂಲು ಮಾಡುವುದು;

(vi) ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಪಠ್ಯೇತರ ಚಟುವಟಿಕೆಗಳಿಗೆ ಅವಕಾಶಗಳನ್ನು ಕಲ್ಪಿಸುವುದು;

(vii) ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಕ್ಯಾಂಪಸುಗಳ, ಪ್ರಾದೇಶಿಕ ಕೇಂದ್ರಗಳ, ಅಧ್ಯಯನ ಕೇಂದ್ರಗಳ ಫ್ಯಾಕಲ್ಟಿ, ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವುದು;

(viii) ವಿಶ್ವವಿದ್ಯಾಲಯದ ಅಥವಾ ಒಂದು ಘಟಕ ಕಾಲೇಜಿನ ಅಥವಾ ಕ್ಯಾಂಪಸ್ಸಿನ, ಪ್ರಾದೇಶಿಕ ಕೇಂದ್ರದ, ಅಧ್ಯಯನ ಕೇಂದ್ರದ ಉದ್ದೇಶಕ್ಕಾಗಿ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದಿರುವ, ಯಾವುದೇ ರೀತಿಯ ಸ್ವಯಂ ದೇಣಿಗೆಗಳು ಮತ್ತು ಕೊಡುಗೆಗಳನ್ನು ಸ್ವೀಕರಿಸುವುದು ಮತ್ತು ನ್ಯಾಸ ಮತ್ತು ದತ್ತಿ ಸ್ವತ್ತುಗಳೂ ಸೇರಿದಂತೆ, ಯಾವುದೇ ಚರ ಅಥವಾ ಸ್ಥಿರ ಸ್ವತ್ತನ್ನು ಆರ್ಜಿಸುವುದು, ಹೊಂದಿರುವುದು, ನಿರ್ವಹಿಸುವುದು, ನಡೆಸುವುದು ಮತ್ತು ಹಸ್ತಾಂತರ ಮಾಡುವುದು;

(ix) ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸಿಕೊಂಡು ಬರುವುದು ಹಾಗೂ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ ವಿದ್ಯಾರ್ಥಿಗಳಿಗೆ ವಸತಿ ಸ್ಥಳಗಳಾಗಿ ಮಾನ್ಯತೆ ನೀಡುವುದು;

(x) ವಸತಿಯ ಮೇಲ್ವಿಚಾರಣೆ ಮಾಡುವುದು ಮತ್ತು ನಿಯಂತ್ರಣ ಮಾಡುವುದು ಹಾಗೂ ವಿದ್ಯಾರ್ಥಿಗಳು ಮತ್ತು ಎಲ್ಲಾ ಪ್ರವರ್ಗಗಳ ಸಿಬ್ಬಂದಿಗಳಲ್ಲಿ ಶಿಸ್ತು ನಿಯಂತ್ರಣ ಮಾಡುವುದು ಮತ್ತು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ನಡತೆ ಸಂಹಿತೆಯನ್ನು ರೂಪಿಸುವುದೂ ಒಳಗೊಂಡಂತೆ, ಅಂಥ ಸಿಬ್ಬಂದಿಗಳ ಸೇವಾಷರತ್ತುಗಳನ್ನು ನಿರೂಪಿಸುವುದು;

(xi) ಶೈಕ್ಷಣಿಕ, ಆಡಳಿತಾತ್ಮಕ ಮತ್ತು ಬೆಂಬಲ ಸಿಬ್ಬಂದಿಯ ಹುದ್ದೆಗಳನ್ನು ಮತ್ತು ಇತರ ಅವಶ್ಯ ಹುದ್ದೆಗಳನ್ನು ಸೃಜಿಸುವುದು;

(xii) ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ಉದ್ದೇಶಗಳಿಗಾಗಿ ಇತರ ವಿಶ್ವವಿದ್ಯಾಲಯಗಳೊಡನೆ ಸಹಕರಿಸುವುದು ಮತ್ತು ಸಹಯೋಗ ಹೊಂದುವುದು;

(xiii) ಶಿಕ್ಷಕರಿಗೆ, ಪಾಠಗಳನ್ನು ರಚಿಸುವವರಿಗೆ, ಮೌಲ್ಯಮಾಪಕರಿಗೆ ಮತ್ತಿತರ ಶೈಕ್ಷಣಿಕ ಸಿಬ್ಬಂದಿಗೆ ಪುನರ್ಮನನ ವ್ಯಾಸಂಗಕ್ರಮಗಳು, ಅಭಿಮುಖ ವ್ಯಾಸಂಗ ಕ್ರಮಗಳು, ಕಾರ್ಯಾಗಾರಗಳು, ವಿಚಾರಗೋಷ್ಠಿಗಳು ಮತ್ತಿತರ ಕಾರ್ಯಕ್ರಮಗಳನ್ನು ಏರ್ಪಡಿಸುವುದು ಮತ್ತು ನಡೆಸುವುದು;

(xiv) ಶೈಕ್ಷಣಿಕ ಪರಿಷತ್ತಿನ ಅನುಮೋದನೆಯೊಂದಿಗೆ ವಿಶ್ವವಿದ್ಯಾಲಯಕ್ಕೆ ಅಥವಾ ಘಟಕ ಕಾಲೇಜಿಗೆ, ಪ್ರಾದೇಶಿಕ ಕೇಂದ್ರಗಳಿಗೆ, ಅಧ್ಯಯನ ಕೇಂದ್ರಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮತ್ತು ಈ ಅಧಿನಿಯಮದಲ್ಲಿ ಕಲ್ಪಿಸಿದ ವ್ಯಾಪ್ತಿಗಿಂತ ಕಡಿಮೆಯಿಲ್ಲದಂತೆ ಕರ್ನಾಟಕದ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮಾನಕ ಗುಣಮಟ್ಟಗಳನ್ನು ನಿರ್ಧರಿಸುವುದು;

(xv) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಕಾರ್ಯರೂಪಕ್ಕೆ ತರಲು ಅವಶ್ಯವಾಗಬಹುದಾದಂಥ ಇತರ ಎಲ್ಲಾ ಕ್ರಮಗಳನ್ನು ಅಥವಾ ಕಾರ್ಯಗಳನ್ನು, ಅವು ಮೇಲೆ ಹೇಳಿದ ಅಧಿಕಾರಗಳಿಗೆ ಪ್ರಾಸಂಗಿಕವಾಗಿರಲಿ ಅಥವಾ ಇಲ್ಲದಿರಲಿ, ಕೈಗೊಳ್ಳುವುದು;

(xvi) ಪರೀಕ್ಷೆಗಳ ಆಧಾರದ ಮೇಲೆ ಅಥವಾ ಸರ್ಕಾರದಿಂದ ಅನುಮೋದಿತವಾದ ಇತರ ಯಾವುದೇ ಮೌಲ್ಯಮಾಪನ ವಿಧಾನದ ಆಧಾರದ ಮೇಲೆ ನೀಡಲು ಪದವಿಗಳು, ಡಿಪ್ಲೋಮಾಗಳು, ಪ್ರಮಾಣಪತ್ರಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಸ್ಥಾಪಿಸುವುದು;

(xvii) ಫಿಲಂಗಳು, ಕ್ಯಾಸೆಟ್‌ಗಳು, ಧ್ವನಿಸುರುಳಿಗಳು, ದೃಶ್ಯಸುರುಳಿಗಳು, ಸಿ.ಡಿ., ವಿ.ಸಿ.ಡಿ. ಮತ್ತು ಇತರ ತಂತ್ರಾಂಶಗಳೂ ಹಾಗೂ ಇತರ ಸಂಬಂಧಿತ ವಿದ್ಯುನ್ಮಾನ ಮತ್ತು ಮುದ್ರಣ ಮಾಧ್ಯಮ ಸೇರಿದಂತೆ ಬೋಧಕ ಸಾಮಗ್ರಿಗಳನ್ನು ತಯಾರಿಸುವುದಕ್ಕಾಗಿ ಅವಕಾಶ ಕಲ್ಪಿಸುವುದು;

(xviii) ಪ್ರಬಂಧಕ ಮಂಡಳಿಯ ಅನುಮೋದನೆಯೊಡನೆ ವಿಶ್ವವಿದ್ಯಾಲಯದ ಉದ್ದೇಶಗಳಿಗಾಗಿ ವಿಶ್ವವಿದ್ಯಾಲಯದ ಸ್ವತ್ತುಗಳನ್ನು ಭದ್ರತೆಯಾಗಿ ನೀಡಿ ಅಥವಾ ನೀಡದೆ ಹಣವನ್ನು ಪಡೆಯುವುದು, ಸಂಗ್ರಹಿಸುವುದು, ಚಂದಾದಾರರಾಗುವುದು ಮತ್ತು ಸಾಲ ಪಡೆಯುವುದು;

(xix) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುದೇ ಇತರ ಶೈಕ್ಷಣಿಕ ಸಂಸ್ಥೆಗಳ ಆಡಳಿತವನ್ನು ವಶಪಡಿಸಿಕೊಳ್ಳುವುದು, ವಹಿಸಿಕೊಳ್ಳುವುದು ಮತ್ತು ನಡೆಸುವುದು;

(xx) ಕಾರ್ಯಕಾರಿ ಪರಿಷತ್ತು ಪೂರ್ವಾನುಮೋದನೆಯೊಂದಿಗೆ ಸ್ವತ್ತುಗಳನ್ನು ಆರ್ಜಿಸುವುದು;

(xxi) ವಿಶ್ವವಿದ್ಯಾಲಯದ ಮೇಲಿನ ಉದ್ದೇಶಗಳಿಗೆ ಸಂಬಂಧಿಸಿದ ಅಥವಾ ಪ್ರಾಸಂಗಿಕವಾದ ಯಾವುದೇ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು.

**9. ವಿಶ್ವವಿದ್ಯಾಲಯವು ಎಲ್ಲಾ ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲರಿಗೂ ಮುಕ್ತವಾಗಿರತಕ್ಕದ್ದು.–** ವಿಶ್ವವಿದ್ಯಾಲಯದ ಪ್ರವೇಶಗಳು ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲಾ ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು. ಎಲ್ಲಾ ಪ್ರವೇಶಗಳನ್ನು ಅರ್ಹತಾ ಪರೀಕ್ಷೆಗಳಲ್ಲಿನ ಅರ್ಹತೆಯ ಆಧಾರದ ಮೇಲೆ ಮಾಡತಕ್ಕದ್ದು:

ಪರಂತು, ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳ ಪ್ರವೇಶದಲ್ಲಿ ಶೇಕಡಾ ನಲವತ್ತರಷ್ಟನ್ನು ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ಮೀಸಲಿಡತಕ್ಕದ್ದು ಮತ್ತು ಪ್ರವೇಶಗಳನ್ನು ರಾಜ್ಯ ಸರ್ಕಾರವು ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡತಕ್ಕದ್ದು ಮತ್ತು ಸೀಟುಗಳನ್ನು ಅರ್ಹತ ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ರೂಪಿಸುವ ಮೀಸಲಾತಿ ನೀತಿಗೆ ಅನುಸಾರವಾಗಿ ಹಂಚಿಕೆ ಮಾಡತಕ್ಕದ್ದು:

ಮತ್ತು ಪರಂತು, ಯಾವುದೇ ಕೋರ್ಸಿನಲ್ಲಿ ಹತ್ತಕ್ಕಿಂತ ಕಡಿಮೆ ಸೀಟುಗಳು ಇರುವಲ್ಲಿ, ಸ್ನಾತಕೋತ್ತರ ಇಂಥ ಕೋರ್ಸುಗಳನ್ನು ಒಟ್ಟಿಗೆ ಒಂದುಗೂಡಿಸುವ ಮೂಲಕ ಮೀಸಲಿಡತಕ್ಕದ್ದು ಮತ್ತು ಯಾವುದೇ ಕೋರ್ಸಿನಲ್ಲಿ ಮೂರು ಸೀಟುಗಳಿಗಿಂತ ಕಡಿಮೆ ಇರುವಲ್ಲಿ, ಅವುಗಳನ್ನು ಸರದಿ ಸುತ್ತಿನಲ್ಲಿ ಮೀಸಲಿಡತಕ್ಕದ್ದು.

**10. ರಾಷ್ಟ್ರೀಯ ಅಧಿಮಾನ್ಯತೆ.–** ವಿಶ್ವವಿದ್ಯಾಲಯವು ಪ್ರಾರಂಭವಾದ ತರುವಾಯ ಆದಷ್ಟು ಬೇಗನೆ ಸಂಬಂಧಪಟ್ಟ ಶಾಸನಾತ್ಮಕ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳಿಂದ ಅಧಿಮಾನ್ಯತೆಯನ್ನು ಕೋರತಕ್ಕದ್ದು ಮತ್ತು ಖಾಸಗಿ ವಿಶ್ವವಿದ್ಯಾಲಯಗಳು ನಡೆಸುವ ಎಲ್ಲಾ ವ್ಯಾಸಂಗ ಕ್ರಮಗಳು ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ವಿನಿಯಮಗಳಿಗೆ ಅನುಸಾರವಾಗಿ ಇರತಕ್ಕದ್ದು.

**11. ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು.–** ಪ್ರಾಯೋಜಕ ಸಂಸ್ಥೆಯು ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದಂತೆ ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಇವುಗಳಲ್ಲಿ ಪ್ರತಿಯೊಂದನ್ನು ಪ್ರಾಯೋಜಕ ಸಂಸ್ಥೆಯು ತನ್ನ ವಿವೇಚನಾನುಸಾರ ಚಲಾಯಿಸಬಹುದು, ಎಂದರೆ:–

(i) ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಪುನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(ii) ವಿಶ್ವವಿದ್ಯಾಲಯದ ಪ್ರಥಮ ಪ್ರಬಂಧಕ ಮಂಡಳಿಯನ್ನು ರಚಿಸುವುದು;

(iii) ಪ್ರಬಂಧಕ ಮಂಡಳಿಯ ಅಧ್ಯಕ್ಷರನ್ನು ನಾಮನಿರ್ದೇಶಿಸುವುದು;

(iv) ಪ್ರಬಂಧಕ ಮಂಡಳಿಯ ಸದಸ್ಯರಾಗಿ ಮೂರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(v) ಕಾರ್ಯಕಾರಿ ಪರಿಷತ್ತಿನ ಸದಸ್ಯರಾಗಿ ಇಬ್ಬರು ವ್ಯಕ್ತಿಗಳನ್ನು ನಾಮ ನಿರ್ದೇಶಿಸುವುದು;

(vi) ವಿಶ್ವವಿದ್ಯಾಲಯದ ದತ್ತಿ ನಿಧಿಗೆ ದೇಣಿಗೆ ನೀಡಲು ನಿಧಿ ಮೂಲಗಳನ್ನು ನಿರ್ಧರಿಸುವುದು;

(vii) ವಿಶ್ವವಿದ್ಯಾಲಯದ ಹಣದ ವಿನಿಯೋಗ ಮತ್ತು ವೆಚ್ಚ ಮಾಡುವುದನ್ನು ನಿರ್ಧರಿಸುವುದು;

(viii) ಈ ಅಧಿನಿಯಮದಲ್ಲಿ ಉಪಬಂಧಿಸಿರುವ ವಿಧಾನದಲ್ಲಿ ಪ್ರಬಂಧಕ ಮಂಡಳಿಯ ಸಭೆಯಲ್ಲಿಯ ವಿವಾದಗಳನ್ನು ಬಗೆಹರಿಸುವುದು;

## ಅಧ್ಯಾಯ – III

## ವಿಶ್ವವಿದ್ಯಾಲಯದ ಅಧಿಕಾರಿಗಳು

**12. ವಿಶ್ವವಿದ್ಯಾಲಯದ ಅಧಿಕಾರಿಗಳು.–** ಈ ಮುಂದಿನವರು ವಿಶ್ವವಿದ್ಯಾಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:–

(i) ಸಂದರ್ಶಕರು;

(ii) ಸಹ–ಸಂದರ್ಶಕರು;

(iii) ಕುಲಾಧಿಪತಿಗಳು;

(iv) ಕುಲಪತಿಗಳು;

(v) ಸಹಕುಲಪತಿಗಳು;

(vi) ಕುಲಸಚಿವರು;

(vii) ಹಣಕಾಸು ಅಧಿಕಾರಿ; ಮತ್ತು

(viii) ಪರಿನಿಯಮಗಳ ಮೂಲಕ ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಘೋಷಿಸಬಹುದಾದಂಥ ಇತರ ಅಧಿಕಾರಿಗಳು.

**13. ಸಂದರ್ಶಕರು.–** (1) ಕರ್ನಾಟಕದ ಘನತೆವೆತ್ತ ರಾಜ್ಯಪಾಲರು ವಿಶ್ವವಿದ್ಯಾಲಯದ ಸಂದರ್ಶಕರಾಗಿರತಕ್ಕದ್ದು ಮತ್ತು ಸಂದರ್ಶಕರು ವಿಶ್ವವಿದ್ಯಾಲಯದ ಕಾರ್ಯನಿರ್ವಹಣೆಯ ಸುಧಾರಣೆಗಾಗಿ ಸಲಹೆಗಳನ್ನು ನೀಡಬಹುದು.

(2) ಸಂದರ್ಶಕರು, ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಸಂದರ್ಶಕರು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ವ್ಯವಹಾರಗಳಿಗೆ ಸಂಬಂಧಿಸಿದಂತೆ, ಯಾವುದೇ ಪತ್ರ ಅಥವಾ ಮಾಹಿತಿಯನ್ನು ತರಿಸಿಕೊಳ್ಳುವುದು.

(ii) ಸಂದರ್ಶಕರು, ಅವರು ಸ್ವೀಕರಿಸಿದ ಮಾಹಿತಿಯ ಆಧಾರದ ಮೇಲೆ ವಿಶ್ವವಿದ್ಯಾಲಯಗಳ ಯಾವುದೇ ಪ್ರಾಧಿಕಾರವು ಮಾಡಿದ ಯಾವುದೇ ಆದೇಶ, ನಡೆಸಿದ ವ್ಯವಹರಣೆಗಳು ಅಥವಾ ಕೈಗೊಂಡ ತೀರ್ಮಾನಗಳು, ಈ ಅಧಿನಿಯಮ, ವಿನಿಯಮಗಳು ಅಥವಾ ನಿಯಮಗಳಿಗೆ ಪೂರಕವಾಗಿಲ್ಲವೆಂದು ಮನಗಂಡರೆ ಅವರು ವಿಶ್ವವಿದ್ಯಾಲಯದ ಹಿತಾಸಕ್ತಿಯಿಂದ ತಾವು ಸೂಕ್ತವೆಂದು ಭಾವಿಸಬಹುದಾದಂಥ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಹಾಗೆ ಹೊರಡಿಸಿದ ನಿರ್ದೇಶನಗಳನ್ನು ಸಂಬಂಧಪಟ್ಟವರೆಲ್ಲರೂ ಪಾಲಿಸತಕ್ಕದ್ದು.

**14. ಸಹ-ಸಂದರ್ಶಕರು.-** (1) ಕರ್ನಾಟಕ ಸರ್ಕಾರದ ಮಾನ್ಯ ಉನ್ನತ ಶಿಕ್ಷಣ ಸಚಿವರು ವಿಶ್ವವಿದ್ಯಾಲಯದ ಸಹ-ಸಂದರ್ಶಕರಾಗಿರತಕ್ಕದ್ದು.

(2) ಸಂದರ್ಶಕರ ಅನುಪಸ್ಥಿತಿಯಲ್ಲಿ ಸಹ-ಸಂದರ್ಶಕರು ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**15. ಕುಲಾಧಿಪತಿಗಳು.-** (1) ಕುಲಾಧಿಪತಿಯವರನ್ನು ಪ್ರಾಯೋಜಕ ಸಂಸ್ಥೆಯು ನೇಮಿಸತಕ್ಕದ್ದು.

(2) ಪ್ರಾಯೋಜಕ ಸಂಸ್ಥೆಯ ಪ್ರಸ್ತುತ ಅಧ್ಯಕ್ಷರು ಮೊದಲನೇ ಕುಲಾಧಿಪತಿಗಳಾಗಿರತಕ್ಕದ್ದು, ಅವರು ತಮ್ಮ ಜೀವನಪರ್ಯಂತ ಅಥವಾ ಅವರು ತಮ್ಮ ಪದವನ್ನು ಬಿಟ್ಟುಕೊಡುವವರೆಗೆ ಕುಲಾಧಿಪತಿಗಳಾಗಿ ಪದಧಾರಣ ಮಾಡಿರತಕ್ಕದ್ದು.

(3) ತದನಂತರದ ಕುಲಾಧಿಪತಿಗಳು, ಅಂಥ ನೇಮಕಾತಿಯನ್ನು ಪರಿಗಣಿಸುವ ಸಂದರ್ಭದಲ್ಲಿ ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ, ಪ್ರಾಯೋಜಕ ಸಂಸ್ಥೆಯ ನ್ಯಾಸಧಾರಿಯಾಗಿರತಕ್ಕದ್ದು ಅಥವಾ ಶಿಕ್ಷಣ, ವಿಜ್ಞಾನ, ಸಂಸ್ಕೃತಿ ಅಥವಾ ಸಾರ್ವಜನಿಕ ಜೀವನ ಕ್ಷೇತ್ರಗಳಲ್ಲಿ ರಾಷ್ಟ್ರೀಯ ಮಟ್ಟದ ಛಾಪನ್ನು ಪಡೆದಿರುವ ಅಂಥ ಇತರ ವ್ಯಕ್ತಿಯಾಗಿರತಕ್ಕದ್ದು.

(4) ಹಾಗೆ ನೇಮಕಗೊಂಡ ತದನಂತರದ ಕುಲಾಧಿಪತಿಗಳು ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ಪದಧಾರಣ ಮಾಡತಕ್ಕದ್ದು.

(5) ಕುಲಾಧಿಪತಿಗಳು ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳ ಅಡಿಯಲ್ಲಿ ಅವರಿಗೆ ಪ್ರದಾನ ಮಾಡಬಹುದಾದಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು, ಅವುಗಳಲ್ಲಿ ಈ ಮುಂದಿನ ಅಧಿಕಾರಗಳು ಒಳಗೊಂಡಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುವುದು;

(ii) ಸಂದರ್ಶಕರ ಮತ್ತು ಸಹ-ಸಂದರ್ಶಕರಿಬ್ಬರ ಗೈರುಹಾಜರಿಯಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಘಟಿಕೋತ್ಸವಗಳಲ್ಲಿ ಅಧ್ಯಕ್ಷತೆಯನ್ನು ವಹಿಸುವುದು;

(iii) ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವುದು;

(iv) ಈ ಅಧಿನಿಯಮ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಅನುಸಾರವಾಗಿ ಕುಲಪತಿಗಳನ್ನು ನೇಮಿಸುವುದು ಅಥವಾ ಪುನರ್ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(v) ಈ ಅಧಿನಿಯಮದ 16ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ನಾಮನಿರ್ದೇಶಕ ಸಮಿತಿಯ ಸದಸ್ಯರಾಗಿ ಒಬ್ಬ ವ್ಯಕ್ತಿಯನ್ನು ನಾಮನಿರ್ದೇಶನ ಮಾಡುವುದು;

(vi) ಸಹಕುಲಪತಿಗಳು, ಡೀನ್, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿಗಳ ನೇಮಕಾತಿಯನ್ನು ಪೂರ್ವಾನುಮೋದಿಸುವುದು;

(vii) ಪ್ರಬಂಧಕ ಮಂಡಳಿಯ ಸದಸ್ಯರನ್ನಾಗಿ ಇಬ್ಬರು ಶಿಕ್ಷಣ ತಜ್ಞರನ್ನು ನಾಮನಿರ್ದೇಶಿಸುವುದು;

(viii) ಮೊದಲ ಸಹಕುಲಪತಿಗಳು ಮತ್ತು ಹಣಕಾಸು ಅಧಿಕಾರಿಗಳನ್ನು ನೇಮಿಸುವುದು;

(ix) ಮೊದಲ ವ್ಯವಸ್ಥಾಪನಾ ಮಂಡಳಿ, ಹಣಕಾಸು ಸಮಿತಿ, ಸಂಶೋಧನಾ ಪರಿಷತ್ತು ಹಾಗೂ ಶೈಕ್ಷಣಿಕ ಪರಿಷತ್ತುಗಳನ್ನು ರಚಿಸುವುದು;

(x) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ ಕಾರ್ಯಸೂಚಿ ವಿಷಯಗಳನ್ನು ಪೂರ್ವಾನುಮೋದಿಸುವುದು;

(xi) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ (ಪ್ರಬಂಧಕ ಮಂಡಳಿಯ ಸಭೆಯಲ್ಲಿ ಉಂಟಾದ ವಿವಾದಗಳನ್ನು ಹೊರತುಪಡಿಸಿ) ವಿವಾದಗಳನ್ನು ಪರಿಹರಿಸುವುದು.

(6) ಪದಾಧಿಕಾರಿ ಅಥವಾ ಸಂಸ್ಥೆ ಮತ್ತು ವಿಶ್ವವಿದ್ಯಾಲಯದ ಯಾವುದೇ ಇತರ ಪದಾಧಿಕಾರಿ ಅಥವಾ ಸಂಸ್ಥೆಯ ನಡು ವಿವಾದಗಳು ಉಂಟಾದಲ್ಲಿ, ಆ ವಿವಾದವನ್ನು ಕುಲಾಧಿಪತಿಯವರ ಪರ್ಯಾಲೋಚನೆಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿವಾದದ ಸಂದರ್ಭದಲ್ಲಿ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**16. ಕುಲಪತಿಗಳು.–** (1) (2)ನೇ ಉಪಪ್ರಕರಣದ ಉಪಬಂಧಗಳಿಗೆ ಅನುಸಾರವಾಗಿ ನಾಮನಿರ್ದೇಶಕ ಸಮಿತಿಯು ಶಿಫಾರಸ್ಸು ಮಾಡಿದ ಮೂರು ವ್ಯಕ್ತಿಗಳ ಪೈಕಿಯಿಂದ ಒಬ್ಬರನ್ನು ಮೂರು ವರ್ಷಗಳ ಅವಧಿಗಾಗಿ ಕುಲಪತಿಗಳನ್ನಾಗಿ, ಪರಿನಿಯಮಗಳಲ್ಲಿ ನಿಯಮಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರು ನೇಮಿಸತಕ್ಕದ್ದು. ಮೂರು ವರ್ಷಗಳ ಅವಧಿಯು ಮುಗಿದ ತರುವಾಯ, ಇದನ್ನು ಮೂರು ವರ್ಷಗಳ ಮತ್ತೊಂದು ಅವಧಿಗೆ ನವೀಕರಿಸಬಹುದು:

ಪರಂತು, ಕುಲಪತಿಯವರು, ತಮ್ಮ ಅವಧಿ ಮುಗಿದ ನಂತರವೂ ಹೊಸ ಕುಲಪತಿಯವರು ಸೇರಿಕೊಳ್ಳುವವರೆಗೆ ಪದದಲ್ಲಿ ಮುಂದುವರೆಯತಕ್ಕದ್ದು. ಆದಾಗ್ಯೂ ಈ ಅವಧಿಯು ಯಾವುದೇ ಸಂದರ್ಭದಲ್ಲಿ ಒಂದು ವರ್ಷವನ್ನು ಮೀರತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಹೇಳಿರುವ ನಾಮನಿರ್ದೇಶಕ ಸಮಿತಿಯಲ್ಲಿ ಈ ಮುಂದಿನ ವ್ಯಕ್ತಿಗಳು ಇರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು ನಾಮನಿರ್ದೇಶಿಸಿದ ಒಬ್ಬ ವ್ಯಕ್ತಿ;

(ii) ಪ್ರಬಂಧಕ ಮಂಡಳಿಯ ಇಬ್ಬರು ನಾಮ ನಿರ್ದೇಶಿತರು, ಇವರಲ್ಲಿ ಒಬ್ಬರನ್ನು ಪ್ರಬಂಧಕ ಮಂಡಳಿಯು ಸಮಿತಿಯ ಸಂಚಾಲಕರೆಂದು ನಾಮನಿರ್ದೇಶಿಸತಕ್ಕದ್ದು.

(3) ನಾಮನಿರ್ದೇಶನ ಸಮಿತಿಯು, ಅರ್ಹತೆಯ ಆಧಾರದ ಮೇಲೆ ಕುಲಪತಿಯ ಹುದ್ದೆಗೆ ಸೂಕ್ತವಾದ ಮೂರು ವ್ಯಕ್ತಿಗಳ ಹೆಸರನ್ನು ಶಿಫಾರಸ್ಸು ಮಾಡತಕ್ಕದ್ದು ಮತ್ತು ಅದನ್ನು ಪ್ರತಿಯೊಬ್ಬ ವ್ಯಕ್ತಿಯ ವಿದ್ಯಾರ್ಹತೆ ಮತ್ತಿತರ ವಿಶಿಷ್ಟ ಪ್ರಶಸ್ತಿಗಳನ್ನು ತಿಳಿಸುವ ಒಂದು ಸಂಕ್ಷಿಪ್ತ ವರದಿಯೊಂದಿಗೆ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು.

(4) ಕುಲಪತಿಯವರು ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಾಹಕ ಮತ್ತು ಶೈಕ್ಷಣಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣವನ್ನು ಚಲಾಯಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯದ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೊಳಿಸತಕ್ಕದ್ದು:

ಪರಂತು, ಶಿಕ್ಷಕರ ನೇಮಕಾತಿಯನ್ನು ಹೊರತುಪಡಿಸಿ ಕೂಡಲೇ ಕ್ರಮವನ್ನು ಕೈಗೊಳ್ಳಬೇಕಾದ ತುರ್ತು ಸ್ವರೂಪದ ಯಾವುದೇ ಇತರ ವಿಷಯಗಳಲ್ಲಿ ಮತ್ತು ಅದನ್ನು ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ವಿಶ್ವವಿದ್ಯಾಲಯವು ಇದಕ್ಕಾಗಿ ಅಧಿಕೃತಗೊಳಿಸಿದ್ದ ಯಾವೊಬ್ಬ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ಇತರ ಸಂಸ್ಥೆಯು ಕೂಡಲೇ ಕ್ರಮಕೈಗೊಳ್ಳುವುದು ಸಾಧ್ಯವಿರದಿರುವಾಗ ಕುಲಪತಿಯವರು ತಾನು ಸೂಕ್ತವೆಂದು ಭಾವಿಸಬಹುದಾದಂತಹ ಕ್ರಮವನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆದು ಕೈಗೊಳ್ಳತಕ್ಕದ್ದು.

(5) ಕುಲಪತಿಯವರು ಪರಿನಿಯಮಗಳು ಅಥವಾ ನಿಯಮಗಳಲ್ಲಿ ಹೇಳಲಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು:

ಪರಂತು, ಕುಲಪತಿಗಳ ಅಭಿಪ್ರಾಯದಲ್ಲಿ, ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಯಾವುದೇ ನಿರ್ಣಯವು, ಈ ಅಧಿನಿಯಮ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳು, ವಿನಿಯಮಗಳು ಅಥವಾ ನಿಯಮಗಳ ಮೂಲಕ ಪ್ರದತ್ತವಾದ ಅಧಿಕಾರದ ಹೊರಗಿದ್ದರೆ ಅಥವಾ ವಿಶ್ವವಿದ್ಯಾಲಯದ ಹಿತಾಸಕ್ತಿಗೆ ಪ್ರತಿಕೂಲವಾಗಬಹುದಾಗಿದ್ದರೆ, ಅದರ ನಿರ್ಣಯದ ದಿನಾಂಕದಿಂದ ಹದಿನೈದು ದಿನಗಳ ಒಳಗೆ ತನ್ನ ನಿರ್ಣಯವನ್ನು ಪರಿಷ್ಕರಿಸಲು ಸಂಬಂಧಪಟ್ಟ ಪ್ರಾಧಿಕಾರವನ್ನು ಆತನು ಕೋರತಕ್ಕದ್ದು ಮತ್ತು ಪ್ರಾಧಿಕಾರವು ಅಂಥ ನಿರ್ಣಯವನ್ನು ಸಂಪೂರ್ಣವಾಗಿ ಅಥವಾ ಭಾಗಶ:ವಾಗಿ ಪರಿಷ್ಕರಿಸಲು ನಿರಾಕರಿಸಿದ ಸಂದರ್ಭದಲ್ಲಿ ಅಥವಾ ಹದಿನೈದು ದಿನಗಳೊಳಗೆ ಯಾವುದೇ ನಿರ್ಣಯವನ್ನು ತೆಗೆದುಕೊಳ್ಳಲು ವಿಫಲವಾದಲ್ಲಿ, ನಂತರ ಅಂಥ ವಿಷಯವನ್ನು ಕುಲಾಧಿಪತಿಗಳಿಗೆ ಕಳುಹಿಸತಕ್ಕದ್ದು ಮತ್ತು ಈ ಬಗ್ಗೆ ಇವರ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

(6) ಕುಲಪತಿಯವರ ಸೇವೆಗಳನ್ನು, ಪ್ರಬಂಧಕ ಮಂಡಳಿಯ ಅನುಮೋದನೆಯೊಂದಿಗೆ ಮತ್ತು ಸಹಜ ನ್ಯಾಯದ ತತ್ವಗಳನ್ನು ಅನುಸರಿಸಿದ ನಂತರ ಹಾಗೂ ಶಿಸ್ತಿನ ಆಧಾರದ ಮೇಲೆ ಅಂತ್ಯಗೊಳಿಸುವ ಸಂದರ್ಭವೂ ಸೇರಿದಂತೆ, ಪ್ರಕರಣದ ಬಗ್ಗೆ ಕುಲಪತಿಯು ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡಿದ ತರುವಾಯ, ಕುಲಾಧಿಪತಿಯವರು ಅಂತ್ಯಗೊಳಿಸಬಹುದು.

(7) ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಸಂದರ್ಶಕರು, ಸಹ-ಸಂದರ್ಶಕರು ಮತ್ತು ಕುಲಾಧಿಪತಿಯವರು ಇವರುಗಳ ಗೈರು ಹಾಜರಿಯ ಸಂದರ್ಭದಲ್ಲಿ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**17. ಸಹಕುಲಪತಿಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಮೂರು ಜನರನ್ನು ಮೀರದಂತೆ ಸಹಕುಲಪತಿಗಳನ್ನು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**18. ವ್ಯಾಸಂಗ ವಿಭಾಗಗಳ ಡೀನ್‌ಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಪರಿನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವ್ಯಾಸಂಗ ವಿಭಾಗಗಳ ಡೀನ್‌ಗಳನ್ನು ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**19. ಕುಲಸಚಿವರು.–** (1) ಕುಲಾಧಿಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಸಚಿವರನ್ನು ನೇಮಕ ಮಾಡತಕ್ಕದ್ದು.

(2) ಪರಿನಿಯಮಗಳಲ್ಲಿ ಪರಿಭಾಷಿಸಿರುವಂಥ ಎಲ್ಲಾ ಕರಾರುಗಳನ್ನು ವಿಶ್ವವಿದ್ಯಾಲಯದ ಪರವಾಗಿ ಕುಲಸಚಿವರು ಮಾಡಿಕೊಳ್ಳತಕ್ಕದ್ದು ಮತ್ತು ಅದಕ್ಕೆ ಸಹಿ ಹಾಕತಕ್ಕದ್ದು.

(3) ಕುಲಸಚಿವರು ವಿಶ್ವವಿದ್ಯಾಲಯದ ಪರವಾಗಿ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಪರಿನಿಯಮಗಳಿಂದ ಪ್ರದತ್ತಗೊಳಿಸಬಹುದಾದಂಥ ಅಥವಾ ಕುಲಾಧಿಪತಿಯವರು ಮತ್ತು ಕುಲಪತಿಯವರು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು ವಿಶ್ವವಿದ್ಯಾಲಯದ ದಾಖಲೆಗಳು ಮತ್ತು ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು, ಕುಲಪತಿಯವರು ಅಥವಾ ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಅಂಥ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿತಕ್ಕದ್ದು.

**20. ಹಣಕಾಸು ಅಧಿಕಾರಿ.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು, ಪರಿನಿಯಮಗಳ ಮೂಲಕ ಪ್ರದತ್ತಗೊಳಿಸಬಹುದಾದ ಅಂಥ ವಿಧಾನದಲ್ಲಿ ಹಣಕಾಸು ಅಧಿಕಾರಿಯನ್ನು ನೇಮಕ ಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**21. ಇತರ ಅಧಿಕಾರಿಗಳು.–** ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ ನೇಮಕಾತಿಯ ವಿಧಾನ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಕರ್ತವ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ – IV

## ವಿಶ್ವವಿದ್ಯಾಲಯದ ಪ್ರಾಧಿಕಾರಗಳು

**22. ವಿಶ್ವವಿದ್ಯಾಲಯದ ಪ್ರಾಧಿಕಾರಗಳು.–** ಈ ಮುಂದಿನವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:–

(i) ಪ್ರಬಂಧಕ ಮಂಡಳಿ;

(ii) ವ್ಯವಸ್ಥಾಪನಾ ಮಂಡಳಿ;

(iii) ಶೈಕ್ಷಣಿಕ ಪರಿಷತ್ತು;

(iv) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು;

(v) ಹಣಕಾಸು ಸಮಿತಿ; ಮತ್ತು

(vi) ವಿಶ್ವವಿದ್ಯಾಲಯದ ಪ್ರಾಧಿಕಾರಗಳೆಂದು ಪರಿನಿಯಮಗಳ ಮೂಲಕ ಘೋಷಿಸಬಹುದಾದ ಅಂಥ ಇತರ ಪ್ರಾಧಿಕಾರಗಳು.

**23. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು.–** (1) ಪ್ರಬಂಧಕ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು – ಅಧ್ಯಕ್ಷರು;

(ii) ಕುಲಪತಿಯವರು – ಸದಸ್ಯರು;

(iii) ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(iv) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(v) ರಾಜ್ಯ ಸರ್ಕಾರವು ನಾಮ ನಿರ್ದೇಶನ ಮಾಡಿದ ಆಡಳಿತವನ್ನು ಒಳಗೊಂಡಂತೆ ವ್ಯವಸ್ಥಾಪನೆ, ಹಣಕಾಸು ಅಥವಾ ಯಾವುದೇ ಇತರ ವಿಶೇಷ ಕ್ಷೇತ್ರದಲ್ಲಿನ ಒಬ್ಬರು ತಜ್ಞರು;

(vi) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಇಬ್ಬರು ವ್ಯಕ್ತಿಗಳು ಅವರ ಪೈಕಿ ಒಬ್ಬರು ಮಹಿಳೆಯಾಗಿರತಕ್ಕದ್ದು;

(vii) ಸಹ ಕುಲಪತಿಯವರು ಮತದಾನದ ಹಕ್ಕಿಲ್ಲದ ಸದಸ್ಯರಾಗಿರತಕ್ಕದ್ದು;

(viii) ವಿಶ್ವವಿದ್ಯಾಲಯ ಅನುದಾನ ಆಯೋಗದ ನಾಮನಿರ್ದೇಶಿತ ಒಬ್ಬ ಸುಪ್ರಸಿದ್ಧ ಶಿಕ್ಷಣ ತಜ್ಞರು.

(2) ಕುಲಸಚಿವರು ಪ್ರಬಂಧಕ ಮಂಡಳಿಯ ಮತ ದಾನದ ಹಕ್ಕಿರದ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ಪ್ರಬಂಧಕ ಮಂಡಳಿಯ ಸದಸ್ಯರ ಪದಾವಧಿ, ಸರ್ಕಾರದಿಂದ ನಾಮನಿರ್ದೇಶಿತರಾದ ಸದಸ್ಯರನ್ನು ಹೊರತುಪಡಿಸಿ ಸದಸ್ಯರ ನೇಮಕಾತಿ, ನವೀಕರಣ ಮತ್ತು ತೆಗೆದುಹಾಕುವುದು ಮುಂತಾದವುಗಳು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಾಧಿಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರ ಗೈರುಹಾಜರಿಯಲ್ಲಿ ಕುಲಾಧಿಪತಿಯವರಿಂದ ನಾಮನಿರ್ದೇಶಿತರಾದ ಯಾರಾದರೂ ಒಬ್ಬರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು. ಅಂಥ ಸಭೆಯ ಅಧ್ಯಕ್ಷತೆಯನ್ನು ವಹಿಸುವುದಕ್ಕೆ ಕುಲಾಧಿಪತಿಯವರು ಯಾವೊಬ್ಬ ವ್ಯಕ್ತಿಯನ್ನೂ ನಾಮನಿರ್ದೇಶನ ಮಾಡಿರದಿದ್ದಲ್ಲಿ, ಸಭೆಯಲ್ಲಿ ಹಾಜರಿರುವ ಸದಸ್ಯರು ಸರಳ ಬಹುಮತದ ಮೂಲಕ ಅವರುಗಳ ಪೈಕಿಯಿಂದಲೇ ಆ ಸಭೆಗೆ ಮಾತ್ರವೇ ಅಧ್ಯಕ್ಷನನ್ನು ಚುನಾಯಿಸತಕ್ಕದ್ದು.

(5) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಿಗೆ, ಅಂಥ ಸಭೆಯಲ್ಲಿ ಹಾಜರಾಗುವ ಮತ್ತು ಮತದಾನ ನೀಡುವ ಮೂರು ಜನ ಸದಸ್ಯರು ಗಣಪೂರ್ತಿ (ಕೋರಂ) ಆಗಿರತಕ್ಕದ್ದು:

ಪರಂತು, ಪ್ರಬಂಧಕ ಮಂಡಳಿಯ ಯಾವುದೇ ಸಭೆಯ ಕೋರಂ ಪೂರ್ಣವಾಗಬೇಕಾದರೆ ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಿರುವುದು ಮತ್ತು ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ನಾಮನಿರ್ದೇಶಿತರು ಹಾಜರಾಗದೇ ಇದ್ದಾಗ ಕುಲಪತಿಯವರು ಹಾಜರಿರುವುದು ಯಾವಾಗಲೂ ಅವಶ್ಯವಾಗಿರತಕ್ಕದ್ದು.

(6) ಪ್ರಬಂಧಕ ಮಂಡಳಿಯು ವಿಶ್ವವಿದ್ಯಾಲಯದ ಪ್ರಧಾನ ಪ್ರಬಂಧಕ ಸಂಸ್ಥೆಯಾಗಿರತಕ್ಕದ್ದು ಮತ್ತು ಅದು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಕಗೊಳಿಸುವುದು;

(ii) ವಿಶ್ವವಿದ್ಯಾಲಯವು ಅನುಸರಿಸಬೇಕಾದ ಕಾರ್ಯನೀತಿಗಳನ್ನು ರಚಿಸುವುದು;

(iii) ಈ ಅಧಿನಿಯಮದ ಅಥವಾ ಪರಿನಿಯಮಗಳ ಅಥವಾ ನಿಯಮಗಳ ಉಪಬಂಧಗಳಿಗೆ ಅನುಗುಣವಾಗಿ ಇರದ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ತೀರ್ಮಾನಗಳನ್ನು ಪುನರೀಕ್ಷಿಸುವುದು;

(iv) ವಿಶ್ವವಿದ್ಯಾಲಯದ ಆಯವ್ಯಯ ಮತ್ತು ವಾರ್ಷಿಕ ವರದಿಗಳನ್ನು ಅನುಮೋದಿಸುವುದು;

(v) ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸುವುದು ಅಥವಾ ಈಗಾಗಲೇ ಇರುವ ಪರಿನಿಯಮಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವುದು ಅಥವಾ ನಿರಸನಗೊಳಿಸುವುದು;

(vi) ವಿಶ್ವವಿದ್ಯಾಲಯವನ್ನು ಸ್ವಯಂಸಮಾಪನಗೊಳಿಸುವ ನಿರ್ಧಾರವನ್ನು ತೆಗೆದುಕೊಳ್ಳುವುದು;

(vii) ಸರ್ಕಾರಕ್ಕೆ ಸಲ್ಲಿಸುವ ಪ್ರಸ್ತಾವಗಳನ್ನು ಅನುಮೋದಿಸುವುದು;

(viii) ಶುಲ್ಕ ನಿಯಂತ್ರಣ ಸಮಿತಿಗೆ ಮೂವರು ಸದಸ್ಯರನ್ನು ನಾಮನಿರ್ದೇಶನ ಮಾಡುವುದು;

(ix) ವಿಶ್ವವಿದ್ಯಾಲಯದ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕೆ ಅಪೇಕ್ಷಣೀಯವೆಂದು ಕಂಡುಬರುವಂಥ ತೀರ್ಮಾನಗಳನ್ನು ಮತ್ತು ಕ್ರಮಗಳನ್ನು ಕೈಗೊಳ್ಳುವುದು.

(7) ಪ್ರಬಂಧಕ ಮಂಡಳಿಯು ಒಂದು ವರ್ಷದಲ್ಲಿ ಕನಿಷ್ಠ ಮೂರು ಸಲ ಸಭೆ ಸೇರತಕ್ಕದ್ದು.

(8) ಪ್ರಬಂಧಕ ಮಂಡಳಿಯು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಸಮಯ ಮತ್ತು ಸ್ಥಳದಲ್ಲಿ ಸಭೆ ಸೇರತಕ್ಕದ್ದು.

**24. ವ್ಯವಸ್ಥಾಪನಾ ಮಂಡಳಿ.–** (1) ವ್ಯವಸ್ಥಾಪನಾ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಗಳು;

(ii) ಸಹಕುಲಪತಿಗಳು;

(iii) ಕುಲಸಚಿವರು;

(iv) ಪ್ರಾಯೋಜಕ ಸಂಸ್ಥೆಯ ಇಬ್ಬರು ನಾಮನಿರ್ದೇಶಿತರು;

(v) ಕುಲಪತಿಗಳು ನಾಮನಿರ್ದೇಶಿಸಬಹುದಾದ ವಿದ್ಯಾಲಯಗಳ ಇಬ್ಬರು ಡೀನ್‌ಗಳು;

(2) ಕುಲಪತಿಯವರು ವ್ಯವಸ್ಥಾಪನಾ ಮಂಡಳಿಯ ಅಧ್ಯಕ್ಷರಾಗಿರತಕ್ಕದ್ದು ಮತ್ತು ಕುಲಸಚಿವರು ವ್ಯವಸ್ಥಾಪನಾ ಮಂಡಳಿಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ವ್ಯವಸ್ಥಾಪನಾ ಮಂಡಳಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ವ್ಯವಸ್ಥಾಪನಾ ಮಂಡಳಿಯ ಎಲ್ಲಾ ಸಭೆಗಳಲ್ಲಿ ಯಾವಾಗಲೂ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು ಹಾಗೂ ಕುಲಪತಿಯವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೇ ಇದ್ದ ಸಂದರ್ಭದಲ್ಲಿ ಸಭೆಯಲ್ಲಿ ಹಾಜರಿರುವ ಸದಸ್ಯರು ಚುನಾಯಿಸಿದ ಯಾವುದೇ ಇತರ ಸದಸ್ಯರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ವ್ಯವಸ್ಥಾಪನಾ ಮಂಡಳಿಯ ಸಭೆಯಲ್ಲಿ ಯಾವುದೇ ವಿಷಯವನ್ನು ಕುರಿತು ವಿವಾದ ಉಂಟಾದಲ್ಲಿ ಸದರಿ ವಿಷಯವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯದ ಬಗ್ಗೆ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**25. ಶೈಕ್ಷಣಿಕ ಪರಿಷತ್ತು.**–(1) ಶೈಕ್ಷಣಿಕ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಕಾರ್ಯದರ್ಶಿಗಳು

(iv) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಶೈಕ್ಷಣಿಕ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಶೈಕ್ಷಣಿಕ ಸಂಸ್ಥೆಯಾಗಿರತಕ್ಕದ್ದು ಮತ್ತು ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಹಾಗೂ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**26. ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು.**– (1) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಸಂಶೋಧನಾ ಮತ್ತು ಅನ್ವೇಷಣಾ ಸಮಿತಿಯಾಗಿರತಕ್ಕದ್ದು ಹಾಗೂ ಸಂಶೋಧನಾ ಕ್ಷೇತ್ರಗಳ ಆದ್ಯತೆಯೂ ಒಳಗೊಂಡಂತೆ, ವಿಶ್ವವಿದ್ಯಾಲಯವು ಕೈಗೊಳ್ಳಬೇಕಾದ ಸಂಶೋಧನೆಯ ಬಗ್ಗೆ ಒಂದು ವ್ಯಾಪಕವಾದ ಪರಿಪೂರ್ಣ ಭವಿಷ್ಯದ್ - ದೃಷ್ಟಿಯನ್ನು ಒದಗಿಸತಕ್ಕದ್ದು. ಈ ಪರಿಷತ್ತು, ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಮತ್ತು ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಸಂಶೋಧನೆ ಮತ್ತು ಅನ್ವೇಷಣಾ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಸಂಶೋಧನೆಯ ಡೀನ್ – ಕಾರ್ಯದರ್ಶಿ

(iv) ಅನ್ವೇಷಣಾ ವಿಭಾಗದ ಮುಖ್ಯಸ್ಥರು – ಸದಸ್ಯರು

(V) ಎಲ್ಲಾ ವ್ಯಾಸಂಗ ವಿಭಾಗಗಳ ಡೀನ್‌ಗಳು – ಸದಸ್ಯರು ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

**27. ಹಣಕಾಸು ಸಮಿತಿ.**– (1) ಹಣಕಾಸು ಸಮಿತಿ ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು ಅಥವಾ ಅವರ ನಾಮನಿರ್ದೇಶಿತರು – ಅಧ್ಯಕ್ಷರು

(ii) ಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಸದಸ್ಯರು

(iv) ಹಣಕಾಸು ಅಧಿಕಾರಿ – ಕಾರ್ಯದರ್ಶಿ

(V) ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು – ಸದಸ್ಯರು; ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಹಣಕಾಸು ಸಮಿತಿಯು ಹಣಕಾಸಿನ ವಿಷಯಗಳನ್ನು ಕೈಗೊಳ್ಳುವ ವಿಶ್ವವಿದ್ಯಾಲಯದ ಪ್ರಧಾನ ಹಣಕಾಸು ಸಂಸ್ಥೆಯಾಗಿರತಕ್ಕದ್ದು ಹಾಗೂ ಅದು ಈ ಅಧಿನಿಯಮ, ನಿಯಮಗಳು ಮತ್ತು ಪರಿನಿಯಮಗಳ ಉಪಬಂಧಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಹಣಕಾಸು ವಿಷಯಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**28. ಇತರ ಪ್ರಾಧಿಕಾರಗಳು.–** ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ರಚನೆ, ಅಧಿಕಾರಗಳು ಹಾಗೂ ಪ್ರಕಾರ್ಯಗಳು ಪರಿನಿಯಮಗಳಿಂದ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

**29. ಒಂದು ಪ್ರಾಧಿಕಾರದ ಅಥವಾ ಸಂಸ್ಥೆಯ ಸದಸ್ಯತ್ವಕ್ಕೆ ಅನರ್ಹತೆ.–** ವಿಶ್ವವಿದ್ಯಾಲಯದ ಸಂಸ್ಥೆಗಳ ಯಾವುವೇ ಪ್ರಾಧಿಕಾರಗಳ ಒಬ್ಬ ವ್ಯಕ್ತಿಯು,–

(ಎ) ಅಸ್ವಸ್ಥ ಚಿತ್ತನಾಗಿದ್ದು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿಸಲ್ಪಟ್ಟಿದ್ದರೆ;

(ಬಿ) ಅವಿಮುಕ್ತ ದಿವಾಳಿಯಾಗಿದ್ದರೆ;

(ಸಿ) ನೈತಿಕ ಅಧಃಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದರೆ;

(ಡಿ) ಖಾಸಗಿ ಬೋಧನಾ ತರಗತಿಗಳನ್ನು ನಡೆಸುತ್ತಿದ್ದರೆ ಅಥವಾ ಸ್ವತಃ ನಿರತನಾಗಿದ್ದರೆ;

(ಇ) ಯಾವುದೇ ವಿಧದಲ್ಲಿ, ಎಲ್ಲಿಯೇ, ಯಾವುದೇ ಪರೀಕ್ಷೆಯನ್ನು ನಡೆಸುವಲ್ಲಿ ಅನುಚಿತ ಅಭ್ಯಾಸದಲ್ಲಿ ತೊಡಗಿದ್ದಕ್ಕಾಗಿ ಅಥವಾ ಉತ್ತೇಜಿಸಿದ್ದಕ್ಕಾಗಿ ದಂಡಿತನಾಗಿದ್ದರೆ;

(ಎಫ್) ಪ್ರಾಯೋಜಿತ ಸಂಸ್ಥೆಯು ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಯಾವೊಬ್ಬ ಸದಸ್ಯನನ್ನು ಆ ಪದವನ್ನು ಹೊಂದಿರುವುದಕ್ಕೆ ಅರ್ಹನಲ್ಲನೆಂದು ಲಿಖಿತದಲ್ಲಿ ಅಭಿಪ್ರಾಯ ನೀಡಿದಾಗಲೆಲ್ಲಾ,

–ಸದಸ್ಯನಾಗಿರುವುದಕ್ಕೆ ಅನರ್ಹನಾಗತಕ್ಕದ್ದು.

**30. ಖಾಲಿಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಕಾರ್ಯ ಅಥವಾ ವ್ಯವಹರಣೆಗಳು ಕೇವಲ ಅದರಲ್ಲಿ ಯಾವುದೇ ಖಾಲಿಸ್ಥಾನ ಇದೆ ಎಂಬ ಕಾರಣದಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣದಿಂದ ಮಾತ್ರವೇ ಅಸಿಂಧುವಾಗತಕ್ಕದ್ದಲ್ಲ.

**31. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು.–** (1) ಯಾವುವೇ ಕಾರ್ಯಸೂಚಿ ವಿಷಯಗಳನ್ನು ಕುಲಾಧಿಪತಿಯವರ ಪೂರ್ವಾನುಮೋದನೆಯನ್ನು ಪಡೆಯದೇ ಪ್ರಬಂಧಕ ಮಂಡಳಿಯ ಅಥವಾ ಕಾರ್ಯಕಾರಿ ಪರಿಷತ್ತು ಅಥವಾ ಯಾವುದೇ ಸಮಿತಿಯ ಸಭೆಗಳ ಕಾರ್ಯಸೂಚಿ ವಿಷಯಗಳಲ್ಲಿ ಸೇರಿಸತಕ್ಕದ್ದಲ್ಲ ಅಥವಾ ಚರ್ಚೆಗೆ ತೆಗೆದುಕೊಳ್ಳತಕ್ಕದ್ದಲ್ಲ ಮತ್ತು ತೀರ್ಮಾನಿಸತಕ್ಕದ್ದಲ್ಲ.

(2) ಈ ಅಧಿನಿಯಮದ ಯಾವುದೇ ಉಪಬಂಧಗಳನ್ನು ಪಾಲಿಸದೆ ಇರುವ ಸಂದರ್ಭದಲ್ಲಿ, ಕುಲಾಧಿಪತಿಯವರು ವಿಶ್ವವಿದ್ಯಾಲಯದ ಯಾವುದೇ ಪದಾಧಿಕಾರಿ ಅಥವಾ ಸಂಸ್ಥೆಯು ತೆಗೆದುಕೊಂಡ ಎಲ್ಲಾ ತೀರ್ಮಾನಗಳನ್ನು ವಿಪರ್ಯಯಗೊಳಿಸುವ ಮೂಲಕ ಪರಿಹಾರ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಅಧಿಕಾರವನ್ನು ಎಲ್ಲಾ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಅಂಥ ಪರಿಹಾರ ಕ್ರಮದ ಪರಿಣಾಮವಾಗಿ ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ವಿಶ್ವವಿದ್ಯಾಲಯದ ಪದಾಧಿಕಾರಿ ಅಥವಾ ಸಂಸ್ಥೆಯು ಕೈಗೊಂಡಿದ್ದ ಎಲ್ಲಾ ಅಂಥ ಕ್ರಮಗಳು, ಮೊದಲಿನಿಂದಲೂ ಶೂನ್ಯ ಮತ್ತು ಅಕೃತ ಎಂದು ಭಾವಿಸತಕ್ಕದ್ದು ಹಾಗೂ ತತ್ಪರಿಣಾಮವಾಗಿ, ಉಪಬಂಧ ಪಾಲಿಸದೇ ಇದ್ದ ವಿಷಯ ಅಥವಾ ನಿರ್ಧಾರದ ಸಂಬಂಧದಲ್ಲಿ ಅದಕ್ಕೆ ಮುಂಚೆ ಇದ್ದ ವಸ್ತುಸ್ಥಿತಿಯೇ ಮುಂದುವರಿಯತಕ್ಕದ್ದು.

## ಅಧ್ಯಾಯ – V

## ಪರಿನಿಯಮಗಳು ಮತ್ತು ವಿನಿಯಮಗಳು

**32. ಪರಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಪರಿನಿಯಮಗಳು ವಿಶ್ವವಿದ್ಯಾಲಯಕ್ಕೆ ಮತ್ತು ಸಿಬ್ಬಂದಿಗೆ ಸಂಬಂಧಿಸಿದ ಎಲ್ಲಾ ಅಥವಾ ಯಾವುದೇ ವಿಷಯಕ್ಕೆ ಈ ಕೆಳಗಿನಂತೆ ಉಪಬಂಧ ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಕಾರ್ಯಕಲಾಪಗಳನ್ನು ನಡೆಸುವ ಮತ್ತು ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸದಿರುವ ಸಂಸ್ಥೆಗಳ ರಚನೆಯ ಕಾರ್ಯವಿಧಾನ;

(ii) ಶಾಶ್ವತ ಶಾಸನಬದ್ಧ ದತ್ತಿ ನಿಧಿ, ವಿಶ್ವವಿದ್ಯಾಲಯ ದತ್ತಿ ನಿಧಿ, ಸಾಮಾನ್ಯ ನಿಧಿ ಹಾಗೂ ಅಭಿವೃದ್ಧಿ ನಿಧಿಗಳ ನಿರ್ವಹಣೆ;

(iii) ಕುಲಪತಿಗಳು, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರ ನೇಮಕಾತಿಯ ನಿಬಂಧನೆಗಳು ಹಾಗೂ ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಪ್ರಕಾರ್ಯಗಳು;

(iv) ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ, ಅಧ್ಯಾಪಕರ ಮತ್ತು ನೌಕರರ ನೇಮಕಾತಿ ವಿಧಾನ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(v) ವಿಶ್ವವಿದ್ಯಾಲಯ ಹಾಗೂ ಅದರ ಅಧಿಕಾರಿಗಳು, ವ್ಯಾಸಂಗ ವಿಭಾಗದ (ಫ್ಯಾಕಲ್ಟಿ) ಸದಸ್ಯರು, ನೌಕರರು ಹಾಗೂ ವಿದ್ಯಾರ್ಥಿಗಳ ನಡುವೆ ಉಂಟಾದ ವಿವಾದಗಳನ್ನು ಪರಿಹರಿಸುವ ಕಾರ್ಯವಿಧಾನ;

(vi) ವಿಭಾಗಗಳು ಮತ್ತು ವ್ಯಾಸಂಗ ವಿಭಾಗಗಳ (ಫ್ಯಾಕಲ್ಟಿಗಳ) ಸೃಜನೆ, ರದ್ದತಿ ಅಥವಾ ಪುನಾರಚನೆ;

(vii) ಇತರ ವಿಶ್ವವಿದ್ಯಾಲಯಗಳು ಅಥವಾ ಉನ್ನತ ಕಲಿಕಾ ಸಂಸ್ಥೆಗಳ ಜೊತೆಯಲ್ಲಿ ಸಹಕರಿಸಬೇಕಾದ ರೀತಿ;

(viii) ಗೌರವ ಪದವಿಗಳ ನೀಡಿಕೆಯ ಕಾರ್ಯವಿಧಾನ;

(ix) ಉಚಿತ ಶಿಕ್ಷಣ (ಫ್ರಿಶಿಪ್) ಮತ್ತು ವಿದ್ಯಾರ್ಥಿವೇತನ ಮಂಜೂರಾತಿಗೆ ಸಂಬಂಧಿಸಿದ ಉಪಬಂಧಗಳು;

(x) ವಿವಿಧ ವ್ಯಾಸಂಗ ಕ್ರಮಗಳಲ್ಲಿನ ಸೀಟುಗಳ ಸಂಖ್ಯೆಗೆ ಸಂಬಂಧಿಸಿದ ಕಾರ್ಯನೀತಿಗಳು ಮತ್ತು ಅಂಥ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಕಾರ್ಯವಿಧಾನ;

(xi) ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಶುಲ್ಕಕ್ಕೆ ಸಂಬಂಧಿಸಿದ ಕಾರ್ಯನೀತಿ;

(xii) ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಉಚಿತ ಶಿಕ್ಷಣ, ಪದಕಗಳು ಹಾಗೂ ಬಹುಮಾನಗಳನ್ನು ಪ್ರಾರಂಭಿಸುವುದು;

(xiii) ಪ್ರಬಂಧಕ ಮಂಡಳಿಯು ನಿರ್ಧರಿಸಬಹುದಾದ ಅಥವಾ ಈ ಅಧಿನಿಯಮದ ಅಡಿಯಲ್ಲಿ ಪರಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬೇಕಾದ ಅಗತ್ಯತೆಯುಳ್ಳ ಯಾವುದೇ ಇತರ ವಿಷಯಗಳು.

33. **ಪರಿನಿಯಮಗಳ ರಚನೆ ವಿಧಾನ.**– (1) ವ್ಯವಸ್ಥಾಪನಾ ಮಂಡಳಿಯು ರಚಿಸಿದ ಮೊದಲ ಪರಿನಿಯಮಗಳನ್ನು ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ವ್ಯವಸ್ಥಾಪನಾ ಮಂಡಳಿಯು ಸಲ್ಲಿಸಿದ ಮೊದಲ ಪರಿನಿಯಮಗಳನ್ನು ಪ್ರಬಂಧಕ ಮಂಡಳಿಯು ಪರಿಗಣಿಸತಕ್ಕದ್ದು ಹಾಗೂ ತಾನು ಅವಶ್ಯವೆಂದು ಭಾವಿಸಬಹುದಾದ ಅಂಥ ಮಾರ್ಪಾಡುಗಳು, ಯಾವುದಾದರು ಇದ್ದಲ್ಲಿ, ಅವುಗಳೊಡನೆ ತನ್ನ ಅನುಮೋದನೆಯನ್ನು ನೀಡತಕ್ಕದ್ದು.

(3) ವಿಶ್ವವಿದ್ಯಾಲಯವು, ಪ್ರಬಂಧಕ ಮಂಡಳಿಯು ಅನುಮೋದಿಸಿದ ಮೊದಲ ಪರಿನಿಯಮಗಳನ್ನು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ಪ್ರಕಟಿಸತಕ್ಕದ್ದು ಮತ್ತು ತದನಂತರ ಮೊದಲ ಪರಿನಿಯಮಗಳ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

34. **ಪರಿನಿಯಮಗಳ ತಿದ್ದುಪಡಿಯ ಅಧಿಕಾರ.**– ಪ್ರಬಂಧಕ ಮಂಡಳಿಯು ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸಬಹುದು ಅಥವಾ ಪರಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ಅವನ್ನು ನಿರಸನಗೊಳಿಸಬಹುದು.

35. **ವಿನಿಯಮಗಳು.**– ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ವಿನಿಯಮಗಳು ಈ ಮುಂದಿನ ವಿಷಯಗಳಿಗೆ ಉಪಬಂಧಗಳನ್ನು ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ವಿದ್ಯಾರ್ಥಿ ಪಟ್ಟಿಯಲ್ಲಿ ಅವರುಗಳ ದಾಖಲಾತಿ ಹಾಗೂ ಮುಂದುವರಿಕೆ;

(ii) ವಿಶ್ವವಿದ್ಯಾಲಯದ ಎಲ್ಲಾ ಪದವಿಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ನಿಗದಿಪಡಿಸತಕ್ಕ ವ್ಯಾಸಂಗ ಕ್ರಮಗಳು;

(iii) ಪದವಿಗಳ ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರದಾನ;

(iv) ಸಂಶೋಧನಾ ವೇತನಗಳು (ಫೆಲೋಶಿಪ್), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಪದಕಗಳು ಮತ್ತು ಬಹುಮಾನಗಳನ್ನು ನೀಡಲು ಷರತ್ತುಗಳು;

(v) ಪರೀಕ್ಷೆಗಳನ್ನು ನಡೆಸುವುದು ಹಾಗೂ ಪರೀಕ್ಷೆ ನಡೆಸುವ ಸಂಸ್ಥೆಗಳು, ಪರೀಕ್ಷಕರು, ಪರೀಕ್ಷಾ ಮೇಲ್ವಿಚಾರಕರು, ಟ್ಯಾಬುಲೇಟರ್‌ಗಳು ಮತ್ತು ಮಾಡರೇಟರ್‌ಗಳ ನೇಮಕಾತಿ ಷರತ್ತುಗಳು ಮತ್ತು ವಿಧಾನ ಹಾಗೂ ಅವರ ಕರ್ತವ್ಯಗಳು;

(vi) ವಿಶ್ವವಿದ್ಯಾಲಯದ ಪರೀಕ್ಷೆಗಳಿಗೆ, ಪದವಿಗಳಿಗೆ ಹಾಗೂ ಇತರ ಶೈಕ್ಷಣಿಕ ಪ್ರಶಸ್ತಿಗಳಿಗೆ ಪ್ರವೇಶಕ್ಕೆ ವಿಧಿಸತಕ್ಕ ಶುಲ್ಕ;

(vii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನಲ್ಲಿ ವಿದ್ಯಾರ್ಥಿಗಳ ನಿವಾಸಕ್ಕಾಗಿ ಷರತ್ತುಗಳು;

(viii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಶಿಸ್ತು ಪಾಲನೆ;

(ix) ಈ ಅಧಿನಿಯಮದ ಅಡಿಯಲ್ಲಿನ ಪರಿನಿಯಮಗಳಲ್ಲಿ ಉಪಬಂಧ ಕಲ್ಪಿಸಬಹುದಾಂಥ ಇತರ ಎಲ್ಲಾ ವಿಷಯಗಳು.

36. **ವಿನಿಯಮಗಳ ರಚನೆ ವಿಧಾನ.**– ವಿನಿಯಮಗಳನ್ನು ಶೈಕ್ಷಣಿಕ ಪರಿಷತ್ತು ರಚಿಸತಕ್ಕದ್ದು ಹಾಗೂ ವ್ಯವಸ್ಥಾಪನಾ ಮಂಡಳಿಯು ಅನುಮೋದಿಸತಕ್ಕದ್ದು.

37. **ವಿನಿಯಮಗಳ ತಿದ್ದುಪಡಿಗೆ ಅಧಿಕಾರ.**– ವ್ಯವಸ್ಥಾಪನಾ ಮಂಡಳಿಯ ಅನುಮೋದನೆಯೊಡನೆ ಶೈಕ್ಷಣಿಕ ಪರಿಷತ್ತು ಹೊಸ ವಿನಿಯಮಗಳನ್ನು ಅಥವಾ ಹೆಚ್ಚುವರಿ ವಿನಿಯಮಗಳನ್ನು ರಚಿಸಬಹುದು ಅಥವಾ ವಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ನಿರಸನಗೊಳಿಸಬಹುದು.

38. **ಶುಲ್ಕ ನಿಯಂತ್ರಣ ಸಮಿತಿ.**– (1) ಸರ್ಕಾರವು ರಚಿಸಿದ ನಿವೃತ್ತ ಸರ್ವೋಚ್ಚ ನ್ಯಾಯಾಲಯದ ಅಥವಾ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು ಮುಖ್ಯಸ್ಥರಾಗಿರುವ ಮತ್ತು ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ, ಉನ್ನತ ಶಿಕ್ಷಣ

ಪ್ರಭಾರದಲ್ಲಿರುವ ಸರ್ಕಾರದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು, ವೈದ್ಯಕೀಯ ಶಿಕ್ಷಣದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ ಅಥವಾ ಉಪಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ಅವರ ನಾಮನಿರ್ದೇಶಿತರು, ಒಬ್ಬ ಮಹಿಳೆಯೂ ಸೇರಿದಂತೆ ಪ್ರಬಂಧಕ ಮಂಡಳಿಯು ನಾಮನಿರ್ದೇಶಿಸಿದ ಇಬ್ಬರು ಶಿಕ್ಷಣ ತಜ್ಞರು ಇವರುಗಳನ್ನು ಒಳಗೊಂಡ ಒಂದು ಶುಲ್ಕ ನಿಯಂತ್ರಣ ಸಮಿತಿಯು, 9ನೇ ಪ್ರಕರಣದ ಅಡಿಯಲ್ಲಿ ಕರ್ನಾಟಕದ ವಿದ್ಯಾರ್ಥಿಗಳಿಗಾಗಿ ಮೀಸಲಿರಿಸಿದ ವಿಶ್ವವಿದ್ಯಾಲಯದ ಸ್ಥಾನಗಳ ಶುಲ್ಕವನ್ನು ನಿಯಂತ್ರಿಸತಕ್ಕದ್ದು. ಸಮಿತಿಯಲ್ಲಿ ಈ ಉದ್ದೇಶಕ್ಕಾಗಿ ಒಬ್ಬರು ಖ್ಯಾತ ಚಾರ್ಟರ್ಡ್ ಅಕೌಂಟೆಂಟ್ ರವರನ್ನು ಸಹ ಸದಸ್ಯನನ್ನಾಗಿ ಸೇರಿಸಿಕೊಳ್ಳತಕ್ಕದ್ದು.

(2) ಸಮಿತಿಯು ವಿಶ್ವವಿದ್ಯಾಲಯದ ಪ್ರವೇಶಗಳ ಮತ್ತು ಶುಲ್ಕದ ಸಂಗ್ರಹಣೆಯ ಅನುಪಾಲನೆಯನ್ನು ನೋಡಿಕೊಳ್ಳತಕ್ಕದ್ದು.

## ಅಧ್ಯಾಯ – VI

### ಸಂಕೀರ್ಣ

**39. ನೌಕರರ ಸೇವಾ ಷರತ್ತುಗಳು.–** (1) ಪರಿನಿಯಮಗಳ ಮತ್ತು ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಥವಾ ನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳು, ಯಾವುದಾದರೂ ಇದ್ದಲ್ಲಿ, ಅವುಗಳಿಗೆ ಒಳಪಟ್ಟು ಪ್ರತಿಯೊಬ್ಬ ನೌಕರನು ಲಿಖಿತ ಕರಾರಿನ ಅಡಿಯಲ್ಲಿ ನೇಮಕಗೊಳ್ಳತಕ್ಕದ್ದು ಮತ್ತು ಅದನ್ನು ವಿಶ್ವವಿದ್ಯಾಲಯದಲ್ಲಿ ಇಟ್ಟುಕೊಳ್ಳತಕ್ಕದ್ದು ಹಾಗೂ ಅದರ ಪ್ರತಿಯನ್ನು ಸಂಬಂಧಪಟ್ಟ ನೌಕರನಿಗೆ ನೀಡತಕ್ಕದ್ದು.

(2) ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಕಾರ್ಯವಿಧಾನಗಳ ಮೂಲಕ ನಿಯಂತ್ರಿಸತಕ್ಕದ್ದು.

(3) ಕರಾರಿನಿಂದಾಗಿ ವಿಶ್ವವಿದ್ಯಾಲಯ ಮತ್ತು ನೌಕರನ ಮಧ್ಯದಲ್ಲಿ ಉದ್ಭವಿಸಬಹುದಾದ ಯಾವುದೇ ವಿವಾದವನ್ನು, ಲಿಖಿತ ಕರಾರಿನಲ್ಲಿ ಉಪಬಂಧಿಸಿದ ವಿಧಾನದಲ್ಲಿ ಹಾಗೂ ಪರಿನಿಯಮಗಳ ಅನುಸಾರವಾಗಿ ಪರಿಹರಿಸತಕ್ಕದ್ದು.

**40. ಮೇಲ್ಮನವಿ ಹಕ್ಕು.–** ವಿಶ್ವವಿದ್ಯಾಲಯವು ತನ್ನ ನೌಕರರ ಅಥವಾ ವಿದ್ಯಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡ ಸಂದರ್ಭದಲ್ಲಿ, ಬಾಧಿತ ನೌಕರ ಅಥವಾ ವಿದ್ಯಾರ್ಥಿಗಳು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಮೇಲ್ಮನವಿ ಹಕ್ಕನ್ನು ಹೊಂದಿರತಕ್ಕದ್ದು.

**41. ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿ .–** ವಿಶ್ವವಿದ್ಯಾಲಯವು, ತನ್ನ ನೌಕರರ ಪ್ರಯೋಜನಕ್ಕಾಗಿ, ಪರಿನಿಯಮಗಳು ಮತ್ತು ಜಾರಿಯಲ್ಲಿರುವ ಕಾನೂನುಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿಯನ್ನು ರಚಿಸತಕ್ಕದ್ದು ಹಾಗೂ ಅಂಥ ವಿಮಾ ಯೋಜನೆಗಳನ್ನು ಒದಗಿಸತಕ್ಕದ್ದು.

**42. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಇತರ ಸಂಸ್ಥೆಯ ಸದಸ್ಯನಾಗಿ ಯಾವೊಬ್ಬ ವ್ಯಕ್ತಿಯು ಸೂಕ್ತವಾಗಿ ಆಯ್ಕೆಯಾಗಿದ್ದಾನೆಯೇ ಅಥವಾ ನೇಮಕಗೊಂಡಿದ್ದಾನೆಯೇ ಅಥವಾ ಅದಕ್ಕೆ ಅರ್ಹನಾಗಿದ್ದಾನೆಯೇ ಎಂಬ ಯಾವುದೇ ಪ್ರಶ್ನೆ ಉದ್ಭವಿಸಿದರೆ, ಆ ವಿಷಯವನ್ನು ತೀರ್ಮಾನಕ್ಕಾಗಿ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**43. ಸಮಿತಿಗಳ ರಚನೆ.–** 22ನೇ ಪ್ರಕರಣದಲ್ಲಿ ನಮೂದಿಸಿದ ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಅಧಿಕಾರವನ್ನು ಹೊಂದಿರುವ ಅಂಥ ಸದಸ್ಯರನ್ನು ಒಳಗೊಂಡ ಅಂಥ ಪ್ರಾಧಿಕಾರದ ಒಂದು ಸಮಿತಿಯನ್ನು ರಚಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**44. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಂಸ್ಥೆಯ ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ಪೈಕಿ ಯಾವುದೇ ಸ್ಥಾನವು ಆಕಸ್ಮಿಕವಾಗಿ ಖಾಲಿಯಾದರೆ, ಯಾರ ಸ್ಥಾನವು ಖಾಲಿಯಾಗಿ ತುಂಬಬೇಕಾಗಿ ಬಂದಿದೆಯೋ ಆ ಸದಸ್ಯನನ್ನು ಯಾವ ರೀತಿಯಲ್ಲಿ ಆರಿಸಲಾಗಿತ್ತೋ ಅದೇ ರೀತಿಯಲ್ಲಿ ಹೊಸ ಸದಸ್ಯನನ್ನು ಆರಿಸಿ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ಖಾಲಿ ಸ್ಥಾನವನ್ನು ಭರ್ತಿ ಮಾಡಿದ ವ್ಯಕ್ತಿಯು ಆತನು ಯಾವ ಸದಸ್ಯನ ಸ್ಥಾನದಲ್ಲಿ ಭರ್ತಿಯಾಗಿರುವನೋ ಆ ಸದಸ್ಯನು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯನಾಗಿ ಉಳಿಯುತ್ತಿದ್ದ ಬಾಕಿ ಅವಧಿಯವರೆಗೆ ಮಾತ್ರ ಸದಸ್ಯನಾಗಿರತಕ್ಕದ್ದು.

**45. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.–** ಈ ಅಧಿನಿಯಮ ಅಥವಾ ಪರಿನಿಯಮಗಳು ಅಥವಾ ನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ವಿಶ್ವವಿದ್ಯಾಲಯದ ಯಾವೊಬ್ಬ ಅಧಿಕಾರಿ ಅಥವಾ ಇತರ ನೌಕರರ ವಿರುದ್ಧ ಯಾವುದೇ ದಾವೆ ಅಥವಾ ಇತರ ಕಾನೂನು ವ್ಯವಹರಣೆಗಳನ್ನು ನಡೆಸಲು ಅವಕಾಶ ಇರತಕ್ಕದ್ದಲ್ಲ.

**46. ತಾತ್ಕಾಲಿಕ ಉಪಬಂಧಗಳು.–** ಈ ಅಧಿನಿಯಮ ಮತ್ತು ಪರಿನಿಯಮಗಳ ಯಾವುದೇ ಇತರ ಉಪಬಂಧಗಳಲ್ಲಿ ಏನೇ ಇದ್ದರೂ,–

(i) ಮೊದಲ ಕುಲಪತಿ ಮತ್ತು ಸಹಕುಲಪತಿ, ಯಾರಾದರೂ ಇದ್ದರೆ, ಅವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(ii) ಮೊದಲ ಕುಲಸಚಿವರನ್ನು ಮತ್ತು ಮೊದಲ ಹಣಕಾಸು ಅಧಿಕಾರಿಯವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು; ಮತ್ತು

(iii) ಮೊದಲ ವ್ಯವಸ್ಥಾಪನ ಮಂಡಳಿ, ಮೊದಲ ಹಣಕಾಸು ಸಮಿತಿ, ಮೊದಲ ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಹಾಗೂ ಮೊದಲ ಶೈಕ್ಷಣಿಕ ಪರಿಷತ್ತನ್ನು ಕುಲಾಧಿಪತಿಯವರು ರಚಿಸತಕ್ಕದ್ದು.

**47. ಶಾಶ್ವತ ಶಾಸನಬದ್ಧ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಕನಿಷ್ಠ ಇಪ್ಪತ್ತೈದು ಕೋಟಿ ರೂಪಾಯಿಗಳನ್ನುಳ್ಳ ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು ಇದರ ಪೈಕಿ ಕನಿಷ್ಠ ಹದಿನೈದು ಕೋಟಿ ರೂಪಾಯಿಗಳು ನಗದು ರೂಪದಲ್ಲಿ ಮತ್ತು ಇನ್ನುಳಿದದ್ದು ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ಇರತಕ್ಕದ್ದು ಮತ್ತು ಇದನ್ನು ತಾನಾಗಿಯೆ ಹೆಚ್ಚಿಸಬಹುದಾಗಿದ್ದು ಆದರೆ ಕಡಿಮೆ ಮಾಡತಕ್ಕದ್ದಲ್ಲ.

ಪರಂತು, ಬೆಂಗಳೂರು ಅಥವಾ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊರಗಿರುವ ವಿಶ್ವವಿದ್ಯಾಲಯದ ಸಂದರ್ಭದಲ್ಲಿ ಕನಿಷ್ಠ ಹತ್ತು ಕೋಟಿ ರೂಪಾಯಿಗಳು ನಗದು ರೂಪದಲ್ಲಿರತಕ್ಕದ್ದು ಮತ್ತು ಉಳಿದ ಐದು ಕೋಟಿ ರೂಪಾಯಿಗಳು ಬ್ಯಾಂಕ್ ಗ್ಯಾರಂಟಿಯ ರೂಪದಲ್ಲಿರತಕ್ಕದ್ದು.

(2) ವಿಶ್ವವಿದ್ಯಾಲಯವು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಹಣವನ್ನು ಹೂಡಲು ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯವು ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಗೆ ವರ್ಗಾವಣೆ ಮಾಡಬಹುದು. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನೂ ಇತರೆ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(4) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಿದ ವರಮಾನದ ಶೇಕಡಾ ಎಪ್ಪತ್ತೈದರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತೈದರಷ್ಟನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಯಲ್ಲಿ ಪುನ: ತೊಡಗಿಸತಕ್ಕದ್ದು.

**48. ವಿಶ್ವವಿದ್ಯಾಲಯದ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ನಿಧಿಗಳನ್ನು ಒಳಗೊಂಡ ವಿಶ್ವವಿದ್ಯಾಲಯದ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದು ಕಾಲಕಾಲಕ್ಕೆ ಸ್ವೀಕರಿಸಬಹುದಾದ ದೇಣಿಗೆಗಳು ಮತ್ತು ಇತರ ನಿಧಿಗಳನ್ನು ಒಳಗೊಂಡಿರತಕ್ಕದ್ದು.

(2) ವಿಶ್ವವಿದ್ಯಾಲಯವು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ವಿಶ್ವವಿದ್ಯಾಲಯದ ದತ್ತಿನಿಧಿಯನ್ನು ಹೂಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯ ದತ್ತಿ ನಿಧಿಯು, ವಿಶ್ವವಿದ್ಯಾಲಯವು ತನ್ನ ಸಾಮಾಜಿಕ ಧ್ಯೇಯೋದ್ದೇಶಗಳನ್ನು ನೆರವೇರಿಸುವ ಸಂದರ್ಭದಲ್ಲಿ ಮತ್ತು/ಅಥವಾ ಮುಂಗಾಣದ ಸನ್ನಿವೇಶದಲ್ಲಿ ಉದ್ಭವಿಸಬಹುದಾದ ಹಣಕಾಸು ಸವಾಲುಗಳಿಂದ ತನ್ನನ್ನು ರಕ್ಷಿಸಿಕೊಳ್ಳುವುದಕ್ಕಾಗಿ, ಸ್ವಇಚ್ಛೆಯಿಂದ ನಿರ್ವಹಿಸಿಕೊಂಡು ಬರಲು ಮತ್ತು ಜವಾಬ್ದಾರಿಯಿಂದ ಹಣ ಹೂಡಿಕೆ ಮಾಡಲು ಇಚ್ಛೆಯುಳ್ಳವರಾಗಿ ಸ್ವಯಂ ವಿಧಿಸಿಕೊಂಡ ನಿಧಿಯಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಗೆ ವರ್ಗಾಯಿಸಬಹುದು. ವಿಶ್ವವಿದ್ಯಾಲಯದ ಸಮಾಪಣೆಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನು ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(5) ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಬರುವ ವರಮಾನದ ಶೇಕಡಾ ಎಂಭತ್ತರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸದ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತರಷ್ಟನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**49. ಸಾಮಾನ್ಯ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಸಾಮಾನ್ಯ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯವು ವಿಧಿಸಬಹುದಾದ ಎಲ್ಲಾ ಶುಲ್ಕಗಳು;

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವುದೇ ಇತರ ಮೂಲದಿಂದ ಸ್ವೀಕರಿಸಲಾದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ದೇಣಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು;

(2) ಸಾಮಾನ್ಯ ನಿಧಿಗೆ ಜಮಾ ಮಾಡುವ ನಿಧಿಗಳನ್ನು ವಿಶ್ವವಿದ್ಯಾಲಯದ ಎಲ್ಲಾ ಆವರ್ತಕ ವೆಚ್ಚಗಳನ್ನು ಭರಿಸಲು ಉಪಯೋಗಿಸಿಕೊಳ್ಳತಕ್ಕದ್ದು.

**50. ಅಭಿವೃದ್ಧಿ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಅಭಿವೃದ್ಧಿ ನಿಧಿಯನ್ನು ಸಹ ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ವಿದ್ಯಾರ್ಥಿಗಳಿಂದ ವಿಧಿಸಬಹುದಾದ ಅಭಿವೃದ್ಧಿ ಶುಲ್ಕಗಳು;

(ii) ವಿಶ್ವವಿದ್ಯಾಲಯದ ಅಭಿವೃದ್ಧಿಯ ಉದ್ದೇಶಗಳಿಗಾಗಿ ಯಾವುದೇ ಇತರ ಮೂಲಗಳಿಂದ ಸ್ವೀಕರಿಸಿದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ವಂತಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು/ವಂತಿಗೆಗಳು; ಮತ್ತು

(v) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಲಾದ ಎಲ್ಲಾ ವರಮಾನಗಳು.

(2) ಅಭಿವೃದ್ಧಿ ನಿಧಿಗೆ ಕಾಲಕಾಲಕ್ಕೆ ಜಮಾ ಮಾಡಿದ ನಿಧಿಯನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಉಪಯೋಗಿಸಿಕೊಳ್ಳತಕ್ಕದ್ದು.

**51. ನಿಧಿಗಳ ನಿರ್ವಹಣೆ.–** 47, 48, 49 ಮತ್ತು 50ನೇ ಪ್ರಕರಣಗಳಡಿಯಲ್ಲಿ ಸ್ಥಾಪಿಸಲಾದ ನಿಧಿಗಳನ್ನು ಪ್ರಬಂಧಕ ಮಂಡಳಿಯ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ನಿಯಂತ್ರಿಸತಕ್ಕದ್ದು ಹಾಗೂ ನಿರ್ವಹಿಸತಕ್ಕದ್ದು.

**52. ವಾರ್ಷಿಕ ವರದಿ.–** (1) ವಿಶ್ವವಿದ್ಯಾಲಯದ ವಾರ್ಷಿಕ ವರದಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ಅದರ ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಪ್ರಬಂಧಕ ಮಂಡಳಿಯು ವಾರ್ಷಿಕ ವರದಿಯನ್ನು ತನ್ನ ಸಭೆಯಲ್ಲಿ ಪರಿಗಣಿಸತಕ್ಕದ್ದು ಹಾಗೂ ಅದನ್ನು ಮಾರ್ಪಾಡುಗಳೊಡನೆ ಅಥವಾ ಮಾರ್ಪಾಡುಗಳಿಲ್ಲದೆ ಅನುಮೋದಿಸಬಹುದು.

(3) ಪ್ರಬಂಧಕ ಮಂಡಳಿಯು ಸೂಕ್ತವಾಗಿ ಅನುಮೋದಿಸಿದ ವಾರ್ಷಿಕ ವರದಿಯ ಒಂದು ಪ್ರತಿಯನ್ನು ಪ್ರತಿವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ಡಿಸೆಂಬರ್ 31ಕ್ಕೆ ಮೊದಲು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**53. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.–** (1) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕ ಪತ್ರ ಮತ್ತು ಜಮಾ ಖರ್ಚು ಪಟ್ಟಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯಕ್ಕೆ ಎಲ್ಲಾ ಮೂಲಗಳಿಂದ ಪ್ರಾಪ್ತವಾಗುವ ಅಥವಾ ಸ್ವೀಕರಿಸಲಾಗುವ ಎಲ್ಲಾ ನಿಧಿಗಳು ಹಾಗೂ ವಿತರಿಸಿದ ಅಥವಾ ಸಂದಾಯ ಮಾಡಿದ ಎಲ್ಲಾ ಮೊಬಲಗುಗಳನ್ನು ವಿಶ್ವವಿದ್ಯಾಲಯವು ನಿರ್ವಹಿಸುವ ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕಪತ್ರಗಳನ್ನು ಪ್ರತಿ ವರ್ಷವೂ ಭಾರತದ ಚಾರ್ಟರ್ಡ್ ಅಕೌಂಟೆಂಟ್‌ಗಳ ಸಂಸ್ಥೆಯ ಸದಸ್ಯರಾಗಿರುವ ಒಬ್ಬ ಲೆಕ್ಕಪರಿಶೋಧಕರಿಂದ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಲೆಕ್ಕಪರಿಶೋಧನಾ ವರದಿಯೊಡನೆ, ಪ್ರತಿ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ನವೆಂಬರ್ 30ಕ್ಕೆ ಮೊದಲು ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(4) ವಾರ್ಷಿಕ ಲೆಕ್ಕಪತ್ರಗಳು, ಜಮಾಖರ್ಚು ಪಟ್ಟಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಪ್ರಬಂಧಕ ಮಂಡಳಿಯು ತನ್ನ ಸಭೆಯಲ್ಲಿ ಪರ್ಯಾಲೋಚಿಸತಕ್ಕದ್ದು ಮತ್ತು ಪ್ರಬಂಧಕ ಮಂಡಳಿಯು ಅದನ್ನು ತನ್ನ ಅಭಿಪ್ರಾಯಗಳೊಡನೆ ಸಂದರ್ಶಕರಿಗೆ ಹಾಗೂ ಸರ್ಕಾರಕ್ಕೆ ಪ್ರತಿ ವರ್ಷದ ಡಿಸೆಂಬರ್ 31ಕ್ಕೆ ಮೊದಲು ಕಳುಹಿಸತಕ್ಕದ್ದು.

(5) ಲೆಕ್ಕಪರಿಶೋಧಕರ ವರದಿಯಲ್ಲಿ ಯಾವುದೇ ಮುಖ್ಯ ಬದಲಾವಣೆ ಇದ್ದ ಸಂದರ್ಭದಲ್ಲಿ, ಅವುಗಳನ್ನು ಸರಿಪಡಿಸಲು, ರಾಜ್ಯ ಸರ್ಕಾರವು ವಿಶ್ವವಿದ್ಯಾಲಯಕ್ಕೆ ನಿರ್ದೇಶನಗಳನ್ನು ಹೊರಡಿಬಹುದು ಮತ್ತು ಅಂಥ ನಿರ್ದೇಶನಗಳು ವಿಶ್ವವಿದ್ಯಾಲಯದ ಮೇಲೆ ಬಂಧನಕಾರಿಯಾಗಿರತಕ್ಕದ್ದು.

**54. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಮಿತಿಯ ಯಾವುದೇ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ ಅಥವಾ ಗೊತ್ತುವಳಿಯು ಅಥವಾ ವಿಶ್ವವಿದ್ಯಾಲಯದ ಸ್ವಾಧೀನದಲ್ಲಿರುವ ಇತರ ದಾಖಲೆಗಳು ಅಥವಾ ವಿಶ್ವವಿದ್ಯಾಲಯವು ಯುಕ್ತವಾಗಿ ನಿರ್ವಹಿಸುವ ಯಾವುದೇ ರಿಜಿಸ್ಟರ್‌ನಲ್ಲಿಯ ಯಾವುದೇ ನಮೂದುಗಳ ಪ್ರತಿಯನ್ನು, ಅದರ ಮೇಲೆ ಕುಲಸಚಿವರು ಪ್ರಮಾಣೀಕರಿಸಿದ್ದರೆ, ಅದನ್ನು ಅಂಥ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ,

ಗೊತ್ತುವಳಿ ಅಥವಾ ದಾಖಲೆ ಅಥವಾ ರಿಜಿಸ್ಟರ್‌ನಲ್ಲಿ ಇರುವ ನಮೂದನ್ನು ಮೇಲ್ನೋಟದ ಸಾಕ್ಷ್ಯವೆಂಬುದಾಗಿ ಸ್ವೀಕರಿಸತಕ್ಕದ್ದು ಮತ್ತು ವಿಷಯಗಳ ಸಾಕ್ಷಿಯಾಗಿ ಅಂಗೀಕರಿಸತಕ್ಕದ್ದು ಹಾಗೂ ಮೂಲ ದಾಖಲೆಗಳನ್ನೇ ಸಲ್ಲಿಸಿದ್ದರೆ ಅದನ್ನು, ದಾಖಲಿಸಿರುವ ವಿಷಯಗಳು ಮತ್ತು ವಹಿವಾಟುಗಳ ಸಾಕ್ಷ್ಯವಾಗಿ ಅಂಗೀಕರಿಸಲಾಗುತ್ತಿತ್ತೋ, ಅದೇ ರೀತಿಯಲ್ಲಿ ಇವನ್ನೂ ಸಾಕ್ಷ್ಯವಾಗಿ ಅಂಗೀಕರಿಸತಕ್ಕದ್ದು.

**55. ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ.**- ರಾಜ್ಯಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಥವಾ ಅದರಲ್ಲಿ ಇರುವ ಯಾವುವೇ ಉಪಬಂಧಗಳನ್ನು ಅಥವಾ ಅದರಡಿಯಲ್ಲಿ ರಚಿಸಿದ ಯಾವುವೇ ನಿಯಮಗಳು ಅಥವಾ ಆದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿರ್ದೇಶನ ನೀಡುವುದು ಅವಶ್ಯವೆಂದು ಅಥವಾ ಉಚಿತವೆಂದು ಅಭಿಪ್ರಾಯಪಟ್ಟಲ್ಲಿ ಅದು ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ ಅಥವಾ ಸಂದರ್ಭಾನುಸಾರವಾಗಿ ವ್ಯವಸ್ಥಾಪನಾ ಮಂಡಳಿಯು ಅಂಥ ಪ್ರತಿಯೊಂದು ನಿರ್ದೇಶನವನ್ನು ಪಾಲಿಸತಕ್ಕದ್ದು.

**56. ದಂಡಗಳು.**- (1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿತವಾದ ನಿಯಮಗಳು ಉಪಬಂಧಗಳನ್ನು ಅಥವಾ ಯಾವುದೇ ಪರೀಕ್ಷಾ ವಿಷಯಗಳನ್ನು ಅಥವಾ ಪದವಿಗಳನ್ನು ನೀಡುವುದಕ್ಕೆ ಅಥವಾ ಅಂಕಪಟ್ಟಿಗಳನ್ನು ನೀಡುವುದಕ್ಕೆ ಸಂಬಂಧಪಟ್ಟ ವಿಷಯಗಳಲ್ಲಿ ಉಲ್ಲಂಘನೆಗಳನ್ನು ಮಾಡುವ ಯಾವೊಬ್ಬ ವ್ಯಕ್ತಿಯು, ಅಪರಾಧ ನಿರ್ಣಯವಾದ ಮೇಲೆ, ಐವತ್ತು ಸಾವಿರ ರೂಪಾಯಿಗಳಿಗೆ ಕಡಿಮೆಯಲ್ಲದ ಆದರೆ ಹತ್ತು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಆರು ತಿಂಗಳ ಅವಧಿಗಿಂತ ಕಡಿಮೆಯಲ್ಲದ ಆದರೆ ಎರಡು ವರ್ಷಗಳ ಅವಧಿಯವರೆಗೆ ವಿಸ್ತರಿಸಬಹುದಾದ ಕಾರಾವಾಸದಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು:

ಪರಂತು, ಅಪರಾಧವನ್ನು ಎಸಗುವಲ್ಲಿ ವಿಶ್ವವಿದ್ಯಾಲಯವೂ ಸಹ ಒಳಗೊಂಡಿರುವಲ್ಲಿ, ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಈ ಅಧಿನಿಯಮದ ಅಡಿಯಲ್ಲಿ ಮಂಜೂರು ಮಾಡಲಾದ ಅನುಮತಿ ಪತ್ರವನ್ನು ಹಿಂತೆಗೆದುಕೊಳ್ಳತಕ್ಕದ್ದು.

(2) ಈ ಪ್ರಕರಣದ ಅಡಿಯಲ್ಲಿಯ ದಂಡವನ್ನು ಇತರ ಯಾವುದೇ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಲಾದ ದಂಡಕ್ಕೆ ಬಾಧಕವಾಗದಂತೆ ವಿಧಿಸಬಹುದು.

**57. ಪ್ರವೇಶಿಸುವ ಮತ್ತು ಪರಿಶೋಧಿಸುವ ಅಧಿಕಾರ.**- ಈ ಉದ್ದೇಶಕ್ಕಾಗಿ, ರಾಜ್ಯಸರ್ಕಾರದಿಂದ ಪ್ರಾಧಿಕೃತಗೊಂಡ 'ಎ' ಸಮೂಹದ ಅಧಿಕಾರಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಯಾವೊಬ್ಬ ಅಧಿಕಾರಿಯು, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಶನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ 37) ಅಡಿಯಲ್ಲಿ ನಿರ್ದಿಷ್ಟಪಡಿಸಿರಬಹುದಾದ ಅಂಥ ಷರತ್ತುಗಳಿಗೆ ಒಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ, ಆ ಅಧಿನಿಯಮದ 9ನೇ ಪ್ರಕರಣದ ಅಡಿಯಲ್ಲಿ ಉಪಬಂಧಿಸಲಾದಂತಹವೇ ಅಧಿಕಾರಗಳನ್ನು ಚಲಾಯಿಸಲು ಮತ್ತು ಪ್ರಕಾರ್ಯಗಳನ್ನು ನೆರವೇರಿಸಲು ಅಧಿಕೃತನಾದ ಅಧಿಕಾರಿ ಎಂಬುದಾಗಿ ಭಾವಿಸತಕ್ಕದ್ದು.

**58. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ನಿರ್ದೇಶನವನ್ನು ನೀಡುವ ಅಧಿಕಾರ.**- (1) ವಿಶ್ವವಿದ್ಯಾಲಯವು ತನ್ನ ರಚನೆ ಅಥವಾ ನಿಗಮನವನ್ನು ನಿಯಂತ್ರಿಸುವ ಕಾನೂನಿಗೆ ಅನುಸಾರವಾಗಿ ತನ್ನ ಸಮಾಪನವನ್ನು ಉದ್ದೇಶಿಸಿದ್ದಲ್ಲಿ, ಅದು ಕನಿಷ್ಠ ಆರು ತಿಂಗಳ ಲಿಖಿತ ಪೂರ್ವ ಸೂಚನೆಯನ್ನು (ನೋಟಿಸು) ಸರ್ಕಾರಕ್ಕೆ ನೀಡತಕ್ಕದ್ದು.

(2) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಈ ಕೆಳಗಿನವುಗಳ ಬಗ್ಗೆ, ಎಂದರೆ:-

(i) ಪದವಿಯನ್ನು ನೀಡುವುದಕ್ಕಾಗಿ ಬೋಧನೆಯ ಗುಣಮಟ್ಟ;

(ii) ಶಿಕ್ಷಣದ ಗುಣಮಟ್ಟ;

(iii) ಉನ್ನತ ಶಿಕ್ಷಣದ ವ್ಯಾಪಾರೀಕರಣವನ್ನು ತಡೆಗಟ್ಟುವುದು;

(iv) ಅಧಿನಿಯಮದ ಉಪಬಂಧಗಳ ಉಲ್ಲಂಘನೆಯ ಬಗ್ಗೆ, ಯಾವುದಾದರೂ ಇದ್ದಲ್ಲಿ,

— ಇವುಗಳ ಬಗ್ಗೆ ನಿಯತಕಾಲಿಕ ಪರಿವೀಕ್ಷಣೆಯನ್ನು ನಡೆಸತಕ್ಕದ್ದು ಮತ್ತು ಸರ್ಕಾರಕ್ಕೆ ವರದಿಯನ್ನು ಕಳುಹಿಸತಕ್ಕದ್ದು.

(3) ದುರ್ವ್ಯವಹರಣೆ, ದುರಾಡಳಿತ ಮತ್ತು ಅಶಿಸ್ತು ಆಗಿದೆ ಎಂಬುದನ್ನು ಗುರುತಿಸಿದರೆ, ಸರ್ಕಾರವು, ವಿಶ್ವವಿದ್ಯಾಲಯದ ಆಡಳಿತವರ್ಗದವರಿಗೆ ಆಡಳಿತವನ್ನು ಸರಿಪಡಿಸಬೇಕೆಂದು ನಿರ್ದೇಶನಗಳನ್ನು ನೀಡತಕ್ಕದ್ದು. ನಿಯಮಿಸಬಹುದಾದ ಅಂಥ ಅವಧಿಯೊಳಗೆ ಆ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುವ ಹಕ್ಕು ಸರ್ಕಾರದಲ್ಲಿ ನಿಹಿತವಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ವಿಧಾನವು, ಸರ್ಕಾರವು ಈ ಸಂಬಂಧದಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು:

ಪರಂತು, ವಿಶ್ವವಿದ್ಯಾಲಯವು ತನ್ನ ಕಾರಣಗಳನ್ನು ಹೇಳಿಕೊಳ್ಳಲು ಸಮಂಜಸ ಅವಕಾಶಗಳನ್ನು ನೀಡಿದ ಹೊರತು ಅಂಥ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

(5) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೋಟಿಸನ್ನು ಸ್ವೀಕರಿಸಿದ ಮೇಲೆ, ಸರ್ಕಾರವು ಸಂಬಂಧಿಸಿದ ನಿಯಂತ್ರಣಾ ಪ್ರಾಧಿಕಾರದೊಡನೆ ಸಮಾಲೋಚಿಸಿ, ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ಅಥವಾ ವ್ಯಾಸಂಗ ಕ್ರಮವನ್ನು

ಪರಿಸಮಾಪನಗೊಳಿಸಲು ಉದ್ದೇಶಿಸಿದ ದಿನಾಂಕದಿಂದ, ವಿಶ್ವವಿದ್ಯಾಲಯದಲ್ಲಿ ನಿಯತ ವ್ಯಾಸಂಗ ಕ್ರಮಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕೊನೆಯ ತಂಡ (ಬ್ಯಾಚ್) ತನ್ನ ವ್ಯಾಸಂಗ ಕ್ರಮವನ್ನು ಮುಗಿಸುವವರೆಗೆ ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು.

**59. ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು.–** (1) 58ನೇ ಪ್ರಕರಣದ (5)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ಅದರ ಆಡಳಿತಾತ್ಮಕ ವೆಚ್ಚಗಳನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ನೇಮಿಸಬಹುದಾದ ಅಂಥ ವಿಧಾನದಲ್ಲಿ ಭರಿಸತಕ್ಕದ್ದು.

(2) ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ವಿಶ್ವವಿದ್ಯಾಲಯದ ವೆಚ್ಚವನ್ನು ಭರಿಸಲು 47, 48, 49, ಮತ್ತು 50ನೇ ಪ್ರಕರಣಗಳ ಅಡಿಯಲ್ಲಿ ಉಲ್ಲೇಖಿಸಲಾದ ನಿಧಿಯು ಸಾಕಷ್ಟು ಇಲ್ಲದಿದ್ದಲ್ಲಿ, ಅಂಥ ವೆಚ್ಚವನ್ನು ಸರ್ಕಾರವು, ವಿಶ್ವವಿದ್ಯಾಲಯದ ಸ್ವತ್ತುಗಳು ಮತ್ತು ಆಸ್ತಿಗಳನ್ನು ವಿಲೇ ಮಾಡುವ ಮೂಲಕ ಭರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಸಮಾಪನೆಯು ದುರ್ವ್ಯವಹರಣೆ ಅಥವಾ ದುರಾಡಳಿತದ ಕಾರಣಗಳಿಗಾಗಿ ಆಗಿದ್ದರೆ, ಸರ್ಕಾರವು ಅಂಥ ದುರ್ವ್ಯವಹಾರಕ್ಕೆ ಅಥವಾ ದುರಾಡಳಿತಕ್ಕೆ ಹೊಣೆಯಾಗಿರುವ ವ್ಯಕ್ತಿಗಳನ್ನು ಗುರುತಿಸುವ ಮತ್ತು ಅವರ ಮೇಲೆ ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ದಂಡನೆಯನ್ನು ವಿಧಿಸಲು ಸ್ವತಂತ್ರವಾಗಿರತಕ್ಕದ್ದು.

**60. ತೊಂದರೆಗಳ ನಿವಾರಣೆಗೆ ಅಧಿಕಾರ.–** (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಅಥವಾ ಆದೇಶದ ಮೂಲಕ ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಐದು ವರ್ಷಗಳು ಮುಕ್ತಾಯವಾದ ತರುವಾಯ ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಅಧಿಸೂಚನೆ ಅಥವಾ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

**61. ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ.–** (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಉಭಯ ಸದನಗಳು ಒಪ್ಪಿದರೆ ತದನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ದತಿಯು ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವನ್ನು ಉಂಟುಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಜಿ.ಕೆ. ಬೋರೇಗೌಡ**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) (500 ಪ್ರತಿಗಳು)

[illegible]l No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| ಭಾಗ-IVA | ಬೆಂಗಳೂರು, ಶನಿವಾರ, ಮಾರ್ಚ್ ೨, ೨೦೧೯ (ಫಾಲ್ಗುಣ ೧೧, ಶಕ ವರ್ಷ ೧೯೪೦) | ನಂ. ೧೫೮ |
|---|---|---|
| Part-IVA | Bengaluru, Saturday, March 2, 2019 (Palguna 11, Shaka Varsha 1940) | No. 158 |

ಸಂಸದೀಯ ವ್ಯವಹಾರಗಳ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಂವ್ಯಶಾಇ 02 ಶಾಸನ 2019, ಬೆಂಗಳೂರು, ದಿನಾಂಕ: 02.03.2019

ಎನ್‌ಐಇ ವಿಶ್ವವಿದ್ಯಾಲಯ ವಿಧೇಯಕ, 2019ಕ್ಕೆ 2019ರ ಫೆಬ್ರವರಿ ತಿಂಗಳ 28ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2019ರ ಕರ್ನಾಟಕ ಅಧಿನಿಯಮ ಸಂಖ್ಯೆ:12 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2019ರ ಕರ್ನಾಟಕ ಅಧಿನಿಯಮ ಸಂಖ್ಯೆ: 12**

(2019ರ ಮಾರ್ಚ್ ತಿಂಗಳ ಎರಡನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದ)

**ಎನ್‌ಐಇ ವಿಶ್ವವಿದ್ಯಾಲಯ ಅಧಿನಿಯಮ, 2019**

(2019ರ ಫೆಬ್ರವರಿ ತಿಂಗಳ ಇಪ್ಪತ್ತೆಂಟನೇ ದಿನಾಂಕದಂದು ರಾಜ್ಯಪಾಲರಿಂದ ಅನುಮೋದನೆಯನ್ನು ಪಡೆಯಲಾಗಿದೆ)

ವಿಜ್ಞಾನಗಳು, ಇಂಜಿನಿಯರಿಂಗ್‌ನ ಎಲ್ಲಾ ಶಾಖೆಗಳು, ಕಲೆ, ವ್ಯವಸ್ಥಾಪನೆ, ವಾಣಿಜ್ಯ ಇವುಗಳಲ್ಲಿ ಅನ್ವಯಿಕ ವಿಶ್ವವಿದ್ಯಾಲಯ ಶಿಕ್ಷಣದ ಪ್ರಗತಿಯನ್ನು ಪ್ರೋತ್ಸಾಹಿಸಲು ಮತ್ತು ಕೈಗೊಳ್ಳಲು ಹಾಗೂ ಅದಕ್ಕೆ ಸಂಬಂಧಿಸಿದ ಅಥವಾ ಅದಕ್ಕೆ ಪ್ರಾಸಂಗಿಕವಾದ ವಿಷಯಗಳಿಗಾಗಿ ನ್ಯಾಷನಲ್ ಇನ್ಸಿಟಿಟ್ಯೂಟ್ ಆಫ್ ಇಂಜಿನಿಯರಿಂಗ್ ಸೊಸೈಟಿಯ ಮೂಲಕ ಖಾಸಗಿ ವಲಯದಲ್ಲಿ ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸಲು ಒಂದು ಅಧಿನಿಯಮ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ವಿಜ್ಞಾನಗಳು, ಇಂಜಿನಿಯರಿಂಗ್‌ನ ಎಲ್ಲಾ ಶಾಖೆಗಳು, ಕಲೆ, ವ್ಯವಸ್ಥಾಪನೆ, ವಾಣಿಜ್ಯ ಇವುಗಳಲ್ಲಿ ಅನ್ವಯಿಕ ವಿಶ್ವವಿದ್ಯಾಲಯ ಶಿಕ್ಷಣದ ಪ್ರಗತಿಯನ್ನು ಪ್ರೋತ್ಸಾಹಿಸಲು ಮತ್ತು ಕೈಗೊಳ್ಳಲು ಹಾಗೂ ಅದಕ್ಕೆ ಸಂಬಂಧಿಸಿದ ಅಥವಾ ಅದಕ್ಕೆ ಪ್ರಾಸಂಗಿಕವಾದ ವಿಷಯಗಳಿಗಾಗಿ ನ್ಯಾಷನಲ್ ಇನ್ಸಿಟಿಟ್ಯೂಟ್ ಆಫ್ ಇಂಜಿನಿಯರಿಂಗ್ ಸೊಸೈಟಿಯ ಮೂಲಕ ಖಾಸಗಿ ವಲಯದಲ್ಲಿ ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:—

## ಅಧ್ಯಾಯ - I

## ಪ್ರಾರಂಭಿಕ

1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.- (1) ಈ ಅಧಿನಿಯಮವನ್ನು ಎನ್‌ಐಇ ವಿಶ್ವವಿದ್ಯಾಲಯ ಅಧಿನಿಯಮ, 2019 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

2. ಪರಿಭಾಷೆಗಳು.- ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) "ಶೈಕ್ಷಣಿಕ ಪರಿಷತ್ತು (ಅಕೆಡೆಮಿಕ್ ಕೌನ್ಸಿಲ್)" ಎಂದರೆ, 26ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿಸಲಾದ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು;

(ಬಿ) "ಕಾರ್ಯಸೂಚಿ ವಿಷಯಗಳು", ಎಂದರೆ, ಪರಿನಿಯಮಗಳಲ್ಲಿ ಹೆಸರಿಸಬಹುದಾದ ಮತ್ತು ಒಂದು ಸಭೆಯಲ್ಲಿ ಆ ವಿಷಯಗಳನ್ನು ಮತ್ತು ಕಲಾಪಗಳನ್ನು ಅನುಮೋದಿಸಬಹುದೆಂದು ತಮ್ಮ ಸಮ್ಮತಿ ಸೂಚಿಸಿ ಕುಲಾಧಿಪತಿಯವರು ಮುಂಚಿತವಾಗಿಯೇ ಲಿಖಿತ ಅನುಮೋದನೆಯನ್ನು ಕೊಟ್ಟಿದ್ದಾಗ ಮಾತ್ರವೇ, ಪ್ರಬಂಧಕರ ಮಂಡಳಿ ಅಥವಾ ವ್ಯವಸ್ಥಾಪನಾ ಮಂಡಳಿ ಅಥವಾ ಶೈಕ್ಷಣಿಕ ಪರಿಷತ್ತು ಅಥವಾ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರ ಅಥವಾ ಸಂದರ್ಭಾನುಸಾರವಾಗಿ ಯಾವುದೇ ಸಮಿತಿಯವರು ಕಾರ್ಯಸೂಚಿಯಲ್ಲಿ ಸೇರಿಸಬಹುದಾದ ಅಥವಾ ಸಭೆಯಲ್ಲಿ ಚರ್ಚೆಗೆ ತೆಗೆದುಕೊಂಡು ನಿರ್ಣಯವನ್ನು ಕೊಡಬಹುದಾದ ಎಲ್ಲಾ ವಿಷಯಗಳು ಮತ್ತು ಕಲಾಪಗಳು;

(ಸಿ) "ಪ್ರಬಂಧಕರ ಮಂಡಳಿ" ಎಂದರೆ, 24ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಪ್ರಬಂಧಕರ ಮಂಡಳಿ;

(ಡಿ) "ವ್ಯವಸ್ಥಾಪನಾ ಮಂಡಳಿ" ಎಂದರೆ 25ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದಂತೆ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿ;

(ಇ) "ಕುಲಾಧಿಪತಿ", "ಕುಲಪತಿ", "ಸಹಕುಲಪತಿ" ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ ಮತ್ತು ಸಹಕುಲಪತಿ;

(ಎಫ್) "ಕ್ಯಾಂಪಸ್" ಎಂದರೆ, ರಾಜ್ಯದೊಳಗೆ ಇರುವ ವಿಶ್ವವಿದ್ಯಾಲಯವು ಸ್ಥಾಪಿಸಿದ, ನಿರ್ವಹಿಸುವ ಒಂದು ಕ್ಯಾಂಪಸ್;

(ಜಿ) "ಸಮಿತಿಗಳು" ಎಂದರೆ, ಈ ಅಧಿನಿಯಮದಡಿಯಲ್ಲಿ ರೂಪಿಸಲಾದ ಸಮಿತಿಗಳು ಅಥವಾ ಸಂದರ್ಭಾನುಸಾರವಾಗಿ ವಿಶ್ವವಿದ್ಯಾಲಯದ ವಿವಿಧ ಕಾರ್ಯಕರ್ತರು ರಚಿಸಿರುವ ಸಮಿತಿಗಳು ಮತ್ತು ಅದರಲ್ಲಿ ನಾಮನಿರ್ದೇಶನ ಸಮಿತಿ, ಹಣಕಾಸು ಸಮಿತಿ ಮತ್ತು ಅಂಥ ಇತರ ಸಮಿತಿಗಳು ಒಳಗೊಳ್ಳುತ್ತವೆ;

(ಎಚ್) "ಘಟಕ ಕಾಲೇಜು" ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುತ್ತಿರುವ ಒಂದು ಕಾಲೇಜು ಅಥವಾ ಸಂಸ್ಥೆ;

(ಐ) "ಹಣಕಾಸು ಸಮಿತಿ" ಎಂದರೆ, 28ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಹಣಕಾಸು ಸಮಿತಿ;

(ಜೆ) "ಸರ್ಕಾರ" ಎಂದರೆ, ಕರ್ನಾಟಕ ಸರ್ಕಾರ;

(ಕೆ) "ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳು" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು, ಶಿಕ್ಷಕರ ಶಿಕ್ಷಣದ ರಾಷ್ಟ್ರೀಯ ಪರಿಷತ್ತು, ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಪರಿಷತ್ತು, ವಾಸ್ತುಶಿಲ್ಪ ಪರಿಷತ್ತು ಇಂಥವುಗಳಲ್ಲಿ ಉನ್ನತ ಶಿಕ್ಷಣದಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುವಂತೆ ನೋಡಿಕೊಳ್ಳುವುದಕ್ಕಾಗಿ ಗುಣಮಟ್ಟಗಳು ಮತ್ತು ಷರತ್ತುಗಳನ್ನು ವಿಧಿಸುವುದಕ್ಕಾಗಿ ಕೇಂದ್ರ ಸರ್ಕಾರವು ಸ್ಥಾಪಿಸಿರುವ ಒಂದು ಸಂಸ್ಥೆ ಮತ್ತು ಇದು ಸರ್ಕಾರವನ್ನು ಒಳಗೊಳ್ಳುತ್ತದೆ;

(ಎಲ್) "ನಿಯಮಿಸಲಾದುದು" ಎಂದರೆ ಈ ಅಧಿನಿಯಮದಡಿಯಲ್ಲಿ ಸರ್ಕಾರವು ರಚಿಸಿದ ನಿಯಮಗಳ ಮೂಲಕ ನಿಯಮಿಸಲಾದುದು.

(ಎಂ) "ಒಂದು ಘಟಕ ಕಾಲೇಜಿಗೆ ಸಂಬಂಧಪಟ್ಟಂತೆ ಪ್ರಾಂಶುಪಾಲರು" ಎಂದರೆ, ಘಟಕ ಕಾಲೇಜಿನ ಮುಖ್ಯಸ್ಥರು ಮತ್ತು ಪ್ರಾಂಶುಪಾಲರು ಇಲ್ಲದಿದ್ದಲ್ಲಿ ಅಥವಾ ನೇಮಕವಾದ ಪ್ರಾಂಶುಪಾಲರ ಗೈರುಹಾಜರಿಯಲ್ಲಿ, ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ತಾತ್ಕಾಲಿಕವಾಗಿ ನೇಮಕಗೊಂಡಿರುವ ಉಪಪ್ರಾಂಶುಪಾಲರು ಅಥವಾ ಯಾವುದೇ ಇತರ ವ್ಯಕ್ತಿಯೂ ಇದರಲ್ಲಿ ಒಳಗೊಳ್ಳುತ್ತಾರೆ;

(ಎನ್) "ಕುಲಸಚಿವರು" ಎಂದರೆ, ವಿಶ್ವವಿದ್ಯಾಲಯದ ಕುಲಸಚಿವರು;

(ಒ) "ಪ್ರಾದೇಶಿಕ ಕೇಂದ್ರ" ಎಂದರೆ, ರಾಜ್ಯದೊಳಗಿನ ಯಾವುದೇ ಪ್ರದೇಶದಲ್ಲಿನ ಅಧ್ಯಯನ ಕೇಂದ್ರಗಳ ಕಾರ್ಯವನ್ನು ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ಮಾಡುವ ಉದ್ದೇಶಕ್ಕಾಗಿ ಮತ್ತು ಅಂಥ ಕೇಂದ್ರಕ್ಕೆ ವ್ಯವಸ್ಥಾಪನಾ ಮಂಡಳಿಯು ಪ್ರದತ್ತ ಮಾಡಬಹುದಾದ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸುವುದಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಅಥವಾ ನಿರ್ವಹಿಸಿಕೊಂಡುಬರುವ ಒಂದು ಕೇಂದ್ರ;

(ಪಿ) ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ "ಪ್ರಾಯೋಜಕ ಸೊಸೈಟಿ" ಅಥವಾ "ಪ್ರಾಯೋಜಕ ಸಂಸ್ಥೆ" ಎಂದರೆ ನ್ಯಾಷನಲ್ ಇನ್ಸಿಟಿಟ್ಯೂಟ್ ಆಫ್ ಇಂಜಿನಿಯರಿಂಗ್ ಸೊಸೈಟಿ;

(ಕ್ಯೂ) "ಸೊಸೈಟಿ" ಎಂದರೆ, ಸೊಸೈಟಿಗಳ ನೋಂದಣಿ ಅಧಿನಿಯಮ, 1860ರ (1860ರ ಕರ್ನಾಟಕ ಅಧಿನಿಯಮ 21) ಅಡಿಯಲ್ಲಿ ನೋಂದಾಯಿತವಾದ ನ್ಯಾಷನಲ್ ಇನ್ಸಿಟಿಟ್ಯೂಟ್ ಆಫ್ ಇಂಜಿನಿಯರಿಂಗ್ ಸೊಸೈಟಿ;

(ಆರ್) "ರಾಜ್ಯ" ಎಂದರೆ, ಕರ್ನಾಟಕ ರಾಜ್ಯ;

(ಎಸ್) "ಪರಿನಿಯಮಗಳು" ಮತ್ತು "ವಿನಿಯಮಗಳು" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಅನುಕ್ರಮವಾಗಿ ವಿಶ್ವವಿದ್ಯಾಲಯದ ಪರಿನಿಯಮಗಳು ಮತ್ತು ವಿನಿಯಮಗಳು;

(ಟಿ) "ಅಧ್ಯಯನ ಕೇಂದ್ರ" ಎಂದರೆ, ವಿದ್ಯಾರ್ಥಿಗಳಿಗೆ ಶಿಕ್ಷಣದ ಸಂಬಂಧದಲ್ಲಿ ಸಲಹೆಗಳನ್ನು ನೀಡುವ, ಸಮಾಲೋಚನೆ ಮಾಡುವ ಅಥವಾ ಇತರ ಯಾವುದೇ ನೆರವನ್ನು ನೀಡುವ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಮತ್ತು ನಿರ್ವಹಿಸಿಕೊಂಡುಬಂದ ರಾಜ್ಯದೊಳಗಿನ ಒಂದು ಕೇಂದ್ರ;

(ಯು) "ಅಧ್ಯಾಪಕರು" ಎಂದರೆ, ಒಬ್ಬ ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಒಂದು ಘಟಕ ಕಾಲೇಜಿನಲ್ಲಿ ಬೋಧಿಸುವುದಕ್ಕೆ ಅಥವಾ ಸಂಶೋಧನೆ ನಡೆಸುವುದಕ್ಕೆ ಅಥವಾ ಸಂಶೋಧನೆಗೆ ಮಾರ್ಗದರ್ಶನ ನೀಡುವುದಕ್ಕೆ ನೇಮಕವಾದ ಅಂಥ ಇತರ ವ್ಯಕ್ತಿ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗವು ನಿರ್ದಿಷ್ಟಪಡಿಸಿದ ಗುಣಮಟ್ಟಗಳಿಗೆ ಅನುಸಾರವಾಗಿ ಇರುವ ಘಟಕ ಕಾಲೇಜಿನ ಪ್ರಾಂಶುಪಾಲರು ಇದರಲ್ಲಿ ಒಳಗೊಳ್ಳುತ್ತಾರೆ;

(ವಿ) "ವಿಶ್ವವಿದ್ಯಾಲಯ" ಎಂದರೆ, "ಎನ್‌ಐಇ ವಿಶ್ವವಿದ್ಯಾಲಯ";

(ಡಬ್ಲ್ಯೂ) "ವಿಶ್ವವಿದ್ಯಾಲಯ ಅನುದಾನಗಳ ಆಯೋಗ" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) 4ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ಆಯೋಗ;

(ಎಕ್ಸ್) "ಸಂದರ್ಶಕರು" ಎಂದರೆ, 13ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ವಿಶ್ವವಿದ್ಯಾಲಯದ ಸಂದರ್ಶಕರು.

## ಅಧ್ಯಾಯ– II

## ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

**3. ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ.–** (1) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಹಕ್ಕನ್ನು ಪ್ರಾಯೋಜಕ ಸೊಸೈಟಿಯು ಹೊಂದಿರತಕ್ಕದ್ದು.

(2) ಸೊಸೈಟಿಯು ರಾಜ್ಯ ಸರ್ಕಾರಕ್ಕೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವವನ್ನು ಸಲ್ಲಿಸತಕ್ಕದ್ದು.

(3) ಪ್ರಸ್ತಾವವು ಈ ಮುಂದಿನ ವಿವರಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಸೊಸೈಟಿಯ ವಿವರಗಳೊಂದಿಗೆ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು;

(ii) ವಿಶ್ವವಿದ್ಯಾಲಯದ ವ್ಯಾಪ್ತಿ ಮತ್ತು ಸ್ಥಾನಮಾನ ಹಾಗೂ ಭೂಮಿಯ ಲಭ್ಯತೆ;

(iii) ಪ್ರಾರಂಭದ ದಿನಾಂಕದಿಂದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳಬೇಕೆಂದಿರುವ ಅಧ್ಯಯನ ಮತ್ತು ಸಂಶೋಧನಾ ಕಾರ್ಯಕ್ರಮಗಳ ಸ್ವರೂಪ ಮತ್ತು ಬಗೆಗಳು;

(iv) ಪ್ರಾರಂಭಿಸಬೇಕೆಂದು ಪ್ರಸ್ತಾಪಿಸಿರುವ ವ್ಯಾಸಂಗ ವಿಭಾಗಗಳು (ಫ್ಯಾಕಲ್ಟಿಗಳು), ಅಧ್ಯಯನ ಕ್ರಮಗಳು ಮತ್ತು ಸಂಶೋಧನೆಗಳ ಸ್ವರೂಪ;

(v) ಕಟ್ಟಡಗಳು, ಸಲಕರಣೆಗಳು ಮತ್ತು ರಚನಾ ಸೌಕರ್ಯಗಳನ್ನು ಒದಗಿಸುವಂಥ ಕ್ಯಾಂಪಸ್ ಅಭಿವೃದ್ಧಿ;

(vi) ಪ್ರಾರಂಭದ ದಿನಾಂಕದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಗಾಗಿ ಬಂಡವಾಳ ವೆಚ್ಚದ ಹಂತಗಳು;

(vii) ಬಾಬುವಾರು ಆವರ್ತಕ ವೆಚ್ಚ, ಆರ್ಥಿಕ ಮೂಲಗಳು ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ತಗಲುವ ಅಂದಾಜು ವೆಚ್ಚ;

(viii) ಸಂಪನ್ಮೂಲ ಸಂಗ್ರಹಣೆಗಾಗಿ ಯೋಜನೆ ಮತ್ತು ಅದಕ್ಕೆ ಬಂಡವಾಳದಿಂದ ತಗಲುವ ವೆಚ್ಚ ಹಾಗೂ ಪ್ರತಿಯೊಂದು ಮೂಲಕ್ಕೂ ಮರು ಸಂದಾಯ ಮಾಡುವ ರೀತಿ;

(ix) ವಿದ್ಯಾರ್ಥಿಗಳಿಂದ ಶುಲ್ಕ ವಸೂಲು ಮಾಡಿ ಆಂತರಿಕವಾಗಿ ನಿಧಿ ಸಂಗ್ರಹಿಸುವ ಯೋಜನೆ, ಸಲಹಾ ಸೇವೆ ಮತ್ತು ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಿಗೆ ಸಂಬಂಧಿಸಿದ ಇತರ ಚಟುವಟಿಕೆಗಳಿಂದ ನಿರೀಕ್ಷಿತ ವರಮಾನಗಳು ಮತ್ತು ಇತರ ನಿರೀಕ್ಷಿತ ವರಮಾನಗಳು;

(x) ಘಟಕವೊಂದಕ್ಕೆ ತಗಲುವ ವೆಚ್ಚದ ವಿವರಗಳು, ಆರ್ಥಿಕವಾಗಿ ದುರ್ಬಲವಾದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕ, ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿ ವೇತನದಲ್ಲಿ ನೀಡುವ ರಿಯಾಯಿತಿ ಅಥವಾ ವಿನಾಯಿತಿಯ ಪರಿಮಿತಿಯ ವಿವರಗಳನ್ನು ಮತ್ತು ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳಿಗೆ ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳು ಪ್ರಾಯೋಜಿಸಿದ ವಿದ್ಯಾರ್ಥಿಗಳಿಗೆ ಮತ್ತು ಭಾರತವನ್ನುಳಿದು ಇತರ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ವಿಧಿಸತಕ್ಕ ಶುಲ್ಕದ ದರಗಳು ಬೇರೆ ಬೇರೆ ಇದ್ದಲ್ಲಿ ಅವುಗಳನ್ನು ಸೂಚಿಸುವ ಶುಲ್ಕ ರಚನೆಯ ವಿವರಗಳು;

(xi) ಸಂಬಂಧಪಟ್ಟ ವಿದ್ಯಾ ವಿಭಾಗದಲ್ಲಿ ಪ್ರಾಯೋಜಕ ಸೊಸೈಟಿ ದೊರಕಿಸಿಕೊಡಲಿರುವ ವರ್ಷಗಳ ಅನುಭವ ಮತ್ತು ಪರಿಣಿತಿ ಹಾಗೂ ಅದರ ಹಣಕಾಸಿನ ಸಂಪನ್ಮೂಲಗಳು;

(xii) ವಿಶ್ವವಿದ್ಯಾಲಯದಲ್ಲಿರುವ ಅಧ್ಯಯನ ಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕಾಗಿ ಇರುವ ವ್ಯವಸ್ಥೆ ; ಮತ್ತು

(xiii) ವಿಶ್ವವಿದ್ಯಾಲಯವು ಸ್ಥಾಪನೆಯಾಗುವುದಕ್ಕೆ ಮೊದಲು ಈ ಅಧಿನಿಯಮದ ಅಡಿಯಲ್ಲಿ ನೆರವೇರಿಸಬೇಕೆಂದು ರಾಜ್ಯ ಸರ್ಕಾರವು ಅಗತ್ಯಪಡಿಸಬಹುದಾದ ಅಂಥ ಇತರ ಷರತ್ತುಗಳ ನೆರವೇರಿಕೆಯ ಹಂತ.

(4) ವಿಶ್ವವಿದ್ಯಾಲಯದ ಸ್ಥಾಪನೆಗೆ ರಾಜ್ಯ ಸರ್ಕಾರಕ್ಕೆ ಶಿಫಾರಸ್ಸುಗಳನ್ನು ಮಾಡಲು ಪ್ರಾಯೋಜಕ ಸೊಸೈಟಿಯಿಂದ ಸ್ವೀಕರಿಸಲಾದ ಪ್ರಸ್ತಾವಗಳನ್ನು ಪರಿಶೀಲಿಸುವುದಕ್ಕಾಗಿ ರಾಜ್ಯ ಸರ್ಕಾರವು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಪದನಿಮಿತ್ತ ಸದಸ್ಯರಾದ ಮೂವರು ಸದಸ್ಯರುಗಳನ್ನು ಒಳಗೊಂಡ ಒಂದು ಶೋಧನಾ ಸಮಿತಿಯನ್ನು ರಚಿಸತಕ್ಕದ್ದು.

**4 ವಿಶ್ವವಿದ್ಯಾಲಯದ ಸ್ಥಾಪನೆ.–** (1) ರಾಜ್ಯ ಸರ್ಕಾರವು ಶೋಧನಾ ಸಮಿತಿಯು ಮಾಡಿದ ಶಿಫಾರಸ್ಸುಗಳನ್ನು ಪರಿಶೀಲಿಸಿದ ತರುವಾಯ ಮತ್ತು ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ, ಈ ಮುಂದಿನವುಗಳನ್ನು ಹೊಂದಿದೆ ಎಂದು ಮನಗಾಣತಕ್ಕದ್ದು, ಎಂದರೆ:-

(i) ಸಾಕಷ್ಟು ಮೂಲ ಸೌಕರ್ಯಗಳೊಂದಿಗೆ, ವಿಶ್ವವಿದ್ಯಾಲಯವನ್ನು ನಡೆಸಲು ಸೊಸೈಟಿಯ ಸಾಮರ್ಥ್ಯ;

(ii) ಅದು ಇರುವ ಸ್ಥಳದ ಅನುಸಾರವಾಗಿ ಕೆಳಗೆ ನಿರ್ದಿಷ್ಟಪಡಿಸಿದ ವ್ಯಾಪ್ತಿಯಲ್ಲಿ ಭೂಮಿಯ ಮಾಲೀಕತ್ವವನ್ನು ಹೊಂದಿದೆ ಎಂದರೆ -

(ಎ) ಅದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಗಳೊಳಗಿದ್ದರೆ ಇಪ್ಪತ್ತೈದು ಎಕರೆ ಭೂಮಿ

(ಬಿ) ಅದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮಿತಿಯ ಹೊರಗೆ ಆದರೆ ಬೆಂಗಳೂರು ಮೆಟ್ರೋಪಾಲಿಟನ್ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಪ್ರದೇಶದ ಒಳಗಿದ್ದರೆ ನಲವತ್ತು ಎಕರೆ ಭೂಮಿ;

(ಸಿ) (ಎ) ಮತ್ತು (ಬಿ) ಖಂಡಗಳಲ್ಲಿ ನಿರ್ದಿಷ್ಟಪಡಿಸಿದ ಸ್ಥಳಗಳನ್ನು ಹೊರತುಪಡಿಸಿ ಇತರ ಸ್ಥಳಗಳಲ್ಲಿ ಐವತ್ತು ಎಕರೆಗಳಿಗೆ ಕಡಿಮೆಯಿಲ್ಲದಷ್ಟು ಭೂಮಿ.

ಮೇಲೆ ನಿರ್ದಿಷ್ಟಪಡಿಸಿದ ಭೂಮಿಯು ಏಕ ಘಟಕ (ಸಿಂಗಲ್ ಬ್ಲಾಕ್) ದಲ್ಲಿರತಕ್ಕದ್ದು ಮತ್ತು ಇದು ಸಂಬಂಧಪಟ್ಟ ಸೊಸೈಟಿ ಅಥವಾ ಸಂಸ್ಥೆ ಅಥವಾ ವಿಶ್ವವಿದ್ಯಾಲಯದ ಹೆಸರಿನಲ್ಲಿರತಕ್ಕದ್ದು. 3ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ಅಗತ್ಯಪಡಿಸಲಾದಂತೆ ಒದಗಿಸಿದ ವಿವರಗಳ ಆಧಾರದ ಮೇಲೆ ಸರ್ಕಾರವು 48ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಬೇಕೆಂದು ಸೊಸೈಟಿಗೆ ನಿರ್ದೇಶನ ನೀಡಬಹುದು;

(2) ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಸ್ಥಾಪನೆಯ ತರುವಾಯ, ರಾಜ್ಯ ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, ಎನ್‌ಐಇ ವಿಶ್ವವಿದ್ಯಾಲಯ ಎಂಬ ಹೆಸರಿನ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ರಾಜ್ಯದಲ್ಲಿ ಸ್ಥಾಪಿಸುವುದಕ್ಕೆ ಮಂಜೂರಾತಿಯನ್ನು ನೀಡಬಹುದು.

(3) ವಿಶ್ವವಿದ್ಯಾಲಯದ ಕೇಂದ್ರ ಕಾರ್ಯಸ್ಥಾನವು ಮೈಸೂರಿನಲ್ಲಿ ಇರತಕ್ಕದ್ದು. ವಿಶ್ವವಿದ್ಯಾಲಯವು ಸ್ಥಾಪನೆಯಾದ ಐದು ವರ್ಷಗಳ ತರುವಾಯ ವಿಶ್ವವಿದ್ಯಾಲಯವು ತನ್ನ ಕ್ಯಾಂಪಸ್ಸುಗಳನ್ನು ಅಥವಾ ಪ್ರಾದೇಶಿಕ ಕೇಂದ್ರಗಳನ್ನು, ಅಧ್ಯಯನ ಕೇಂದ್ರಗಳನ್ನು ಕರ್ನಾಟಕದಲ್ಲಿ ಎಲ್ಲಿಯಾದರೂ ಹೊಂದಿರತಕ್ಕದ್ದು ಮತ್ತು ಇದು ರಾಜ್ಯ ಸರ್ಕಾರದ ಪೂರ್ವಾನುಮತಿಯನ್ನು ಪಡೆದುಕೊಳ್ಳುವುದಕ್ಕೊಳಪಟ್ಟಿರತಕ್ಕದ್ದು ಹಾಗೂ ವಿಶ್ವವಿದ್ಯಾಲಯ ಅನುದಾನಗಳ ಆಯೋಗದ ಗುಣಮಟ್ಟಗಳಿಗನುಸಾರವಾಗಿರತಕ್ಕದ್ದು.

(4) ಮೊದಲ ಕುಲಾಧಿಪತಿಯವರು, ಮೊದಲ ಕುಲಪತಿಯವರು, ಪ್ರಬಂಧಕ ಮಂಡಳಿಯ ಮೊದಲ ಸದಸ್ಯರುಗಳು, ವ್ಯವಸ್ಥಾಪನಾ ಮಂಡಳಿಯ ಹಾಗೂ ಶೈಕ್ಷಣಿಕ ಪರಿಷತ್ತಿನ ಮೊದಲ ಸದಸ್ಯರುಗಳು ಮತ್ತು ಇನ್ನು ಮುಂದೆ, ಅಂಥ ಅಧಿಕಾರಿಗಳು ಅಥವಾ ಸದಸ್ಯರುಗಳಾಗಬಹುದಾದಂಥ ಎಲ್ಲಾ ವ್ಯಕ್ತಿಗಳು, ಅಂಥ ಪದ ಅಥವಾ ಸದಸ್ಯತ್ವವನ್ನು ಹೊಂದಿರುವುದು ಮುಂದುವರೆಯುವವರೆಗೆ, ಒಂದು ನಿಗಮಿತ ನಿಕಾಯವನ್ನು ರಚಿಸತಕ್ಕದ್ದು ಮತ್ತು ಅದು ವಿಶ್ವವಿದ್ಯಾಲಯದ ಹೆಸರಿನಲ್ಲಿ ದಾವೆ ಹೂಡಬಹುದು ಮತ್ತು ದಾವೆಗೊಳಗಾಗಬಹುದು.

(5) (2)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯವು ಸ್ಥಾಪನೆಗೆ ಮಂಜೂರಾತಿಯಾದ ಮೇಲೆ, ವಿಶ್ವವಿದ್ಯಾಲಯದ ಉದ್ದೇಶಕ್ಕಾಗಿ, ಪ್ರಾಯೋಜಕ ಸೊಸೈಟಿಯು ಆರ್ಜಿಸಿದ, ಸೃಜಿಸಿದ, ಏರ್ಪಾಟು ಮಾಡಿಕೊಂಡ ಅಥವಾ ಕಟ್ಟಲ್ಪಟ್ಟ ಭೂಮಿ ಮತ್ತು ಇತರ ಸ್ಥಿರ ಮತ್ತು ಚರ ಸ್ವತ್ತು, ವಿಶ್ವವಿದ್ಯಾಲಯದಲ್ಲಿ ನಿಹಿತವಾಗಿರತಕ್ಕದ್ದು.

(6) ವಿಶ್ವವಿದ್ಯಾಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದ ಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂಥ ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

(7) ವಿಶ್ವವಿದ್ಯಾಲಯದಲ್ಲಿನ ಭೂಮಿ, ಕಟ್ಟಡ ಮತ್ತು ಇತರ ಸ್ವತ್ತುಗಳನ್ನು ವಿಶ್ವವಿದ್ಯಾಲಯದ ಉದ್ದೇಶಗಳಿಗೆ ಆನುಷಂಗಿಕವಾಗಿರುವುದನ್ನು ಹೊರತುಪಡಿಸಿ ಇತರ ಯಾವುದೇ ಉದ್ದೇಶಕ್ಕಾಗಿ ಬಳಸತಕ್ಕದ್ದಲ್ಲ.

**5. ಅನುದಾನಗಳು ಮತ್ತು ಹಣಕಾಸು ನೆರವು.–** ವಿಶ್ವವಿದ್ಯಾಲಯವು ಸ್ವಂತ ಧನಮೂಲವುಳ್ಳ ಲಾಭರಹಿತ ಸಂಸ್ಥೆಯಾಗಿರತಕ್ಕದ್ದು ರಾಜ್ಯದಿಂದ ಅಥವಾ ರಾಜ್ಯದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಇತರ ಸಂಸ್ಥೆ ಅಥವಾ ನಿಗಮದಿಂದ ಯಾವುದೇ ನಿರ್ವಹಣಾ ಸಹಾಯ ಅನುದಾನ ಅಥವಾ ಯಾವುದೇ ಹಣಕಾಸು ನೆರವನ್ನು ಹಕ್ಕಿನಿಂದ ಕೇಳತಕ್ಕದ್ದಲ್ಲ ಅಥವಾ ಅದನ್ನು ಪಡೆಯಲು ಹಕ್ಕನ್ನು ಹೊಂದಿರತಕ್ಕದ್ದಲ್ಲ:

ಪರಂತು, ರಾಜ್ಯವು,–

(ಎ) ಇತರ ರಾಜ್ಯ ಸರ್ಕಾರದ ಸಂಘಟನೆಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿರುವಂಥದ್ದೇ ಸಂಶೋಧನೆ, ಅಭಿವೃದ್ಧಿ ಮತ್ತಿತರ ಚಟುವಟಿಕೆಗಳಿಗಾಗಿ; ಅಥವಾ

(ಬಿ) ರಾಜ್ಯ ಸರ್ಕಾರದಿಂದ ನೆರವನ್ನು ಪಡೆಯುವ ಯಾವುದೇ ನಿರ್ದಿಷ್ಟ ಸಂಶೋಧನೆ ಅಥವಾ ಕಾರ್ಯಕ್ರಮಗಳಿಗಾಗಿ; ಅಥವಾ

(ಸಿ) ರಾಜ್ಯ ಕಾರ್ಯನೀತಿಯ ಬದಲಾವಣೆಗೆ ಒಳಪಟ್ಟು ಅಥವಾ ಅನ್ಯಥಾ ಇದೇ ಬಗೆಯ ವಿಶ್ವವಿದ್ಯಾಲಯಗಳ ಪ್ರಯೋಜನಕ್ಕಾಗಿ,

– ಅನುದಾನದ ಮೂಲಕ ಅಥವಾ ಅನ್ಯಥಾ ಹಣಕಾಸು ಬೆಂಬಲವನ್ನು ಒದಗಿಸಬಹುದು:

ಮತ್ತು ಪರಂತು, ವಿಶ್ವವಿದ್ಯಾಲಯವು, ಯಾವುದೇ ಇತರ ಮೂಲದಿಂದ ಯಾವುದೇ ಆರ್ಥಿಕ ನೆರವನ್ನು ಸ್ವೀಕರಿಸಬಹುದು

6. **ಘಟಕ ಕಾಲೇಜು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಅಥವಾ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದಕ್ಕೆ ಅಧಿಕಾರ.–** ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಐದು ವರ್ಷಗಳನ್ನು ಪೂರ್ಣಗೊಳಿಸಿದ ನಂತರ, ವಿಶ್ವವಿದ್ಯಾಲಯ ಅನುದಾನ ಆಯೋಗದ ಮತ್ತು ಇತರ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ಗುಣಮಟ್ಟಗಳಿಗೆ ಒಳಪಟ್ಟು, ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ, ವಿಶ್ವವಿದ್ಯಾಲಯವು, ರಾಜ್ಯದಲ್ಲಿ ತನಗೆ ಸೂಕ್ತವೆನಿಸುವಂಥ ಸ್ಥಳಗಳಲ್ಲಿ ಘಟಕ ಕಾಲೇಜುಗಳು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದಿರಬಹುದು.

7. **ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು.–** ವಿಶ್ವವಿದ್ಯಾಲಯವು, ತನ್ನ ಭವಿಷ್ಯದ್‌ದೃಷ್ಟಿ ಮತ್ತು ಧ್ಯೇಯೋದ್ದೇಶಗಳನ್ನು ಸಾಧಿಸಲು ಈ ಮುಂದಿನಂತೆ ವಿವಿಧ ಬಗೆಯ ಕಾರ್ಯತಂತ್ರಗಳನ್ನು ಕೈಗೊಳ್ಳಬಹುದು:–

(i) ಇತರ ಸಂಬಂಧಿತ ಅಭಿವೃದ್ಧಿ ಕ್ಷೇತ್ರಗಳನ್ನು ಒಳಗೊಂಡಂತೆ ತಾಂತ್ರಿಕ ಶಿಕ್ಷಣ, ಹಣಕಾಸು, ವ್ಯವಸ್ಥಾಪನೆ, ಬೋಧನೆ ಕಲಿಕೆ, ಮುಕ್ತ ಕಲೆಗಳು, ಮಾನವಿಕಗಳು, ಕಲೆ, ವಿವಿಧ ವ್ಯಾಸಂಗ ಕ್ರಮಗಳಲ್ಲಿ ಶಿಕ್ಷಣ, ಬೋಧನೆ ತರಬೇತಿ, ಸಂಶೋಧನೆ, ಸಮಾಲೋಚನೆ ಮತ್ತು ಅಭಿವೃದ್ಧಿಯನ್ನು ಕಲ್ಪಿಸುವುದು ಹಾಗೂ ಈ ಕ್ಷೇತ್ರಗಳಲ್ಲಿ ಸಂಶೋಧನೆ, ಪ್ರಗತಿ ಮತ್ತು ಜ್ಞಾನ ಪ್ರಸಾರಕ್ಕೆ ಉಪಬಂಧಗಳನ್ನು ಕಲ್ಪಿಸುವುದು;

(ii) ಉನ್ನತ ಮತ್ತು ವೃತ್ತಿ ಶಿಕ್ಷಣದಲ್ಲಿ ಬೋಧಕರಿಗಾಗಿ, ಆಡಳಿತಗಾರರಿಗಾಗಿ ಹಾಗೂ ಸರ್ಕಾರಿ, ಸಾರ್ವಜನಿಕ ಮತ್ತು ಖಾಸಗಿ ವಲಯದಲ್ಲಿ ಕೆಲಸ ಮಾಡುವ ವೃತ್ತಿನಿರತರಿಗಾಗಿ ಮತ್ತು ಇತರ ವ್ಯವಸ್ಥೆಗಳಲ್ಲಿನ ಅಭಿವೃದ್ಧಿ ವೃತ್ತಿ ನಿರತರಿಗಾಗಿ ಉನ್ನತ ಗುಣಮಟ್ಟದ ತರಬೇತಿ, ಸಾಮರ್ಥ್ಯ ವೃದ್ಧಿ ಹಾಗೂ ಬೆಳವಣಿಗೆ ವ್ಯವಸ್ಥೆಗಳನ್ನು ವಿನ್ಯಾಸಗೊಳಿಸುವುದು ಮತ್ತು ಪ್ರಚುರಪಡಿಸುವುದು ;

(iii) ಗುಣಮಟ್ಟದ ಶಿಕ್ಷಣಕ್ಕೆ ಕೊಡುಗೆಯನ್ನು ನೀಡಲು ಸಂಪನ್ಮೂಲ ಕೇಂದ್ರಗಳನ್ನು ಅಭಿವೃದ್ಧಿಪಡಿಸುವುದು;

(iv) ಕ್ಯಾಂಪಸ್‌ಗಳನ್ನು ಸ್ಥಾಪಿಸುವುದು ಮತ್ತು ಐದು ವರ್ಷಗಳ ತರುವಾಯ ಕರ್ನಾಟಕದ ಹಲವು ಸ್ಥಳಗಳಲ್ಲಿ ಅಧ್ಯಯನ ಕೇಂದ್ರಗಳು, ಘಟಕ ಕಾಲೇಜುಗಳು ಮತ್ತು ಪ್ರಾದೇಶಿಕ ಕೇಂದ್ರಗಳನ್ನು ಹೊಂದುವುದು ಹಾಗೂ ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ವಿಶ್ವವಿದ್ಯಾಲಯ ಅನುದಾನಗಳ ಆಯೋಗದ ರೂಢಿಗಳ ಅನುಸಾರವಾಗಿ ತಾಂತ್ರಿಕ ಮತ್ತು ವೃತ್ತಿ ಶಿಕ್ಷಣ ಹಾಗೂ ಸಾಮಾಜಿಕ ಮತ್ತು ಮಾನವ ಅಭಿವೃದ್ಧಿಗಳಲ್ಲಿ ಶೈಕ್ಷಣಿಕ ಬದಲಾವಣೆಗಾಗಿ ಕೊಡುಗೆ ನೀಡುವುದು ಮತ್ತು ಅದರ ಅರ್ಥೈಸುವಿಕೆಯನ್ನು ಅಭಿವೃದ್ಧಿಗೊಳಿಸುವುದು;

(v) ಮೌಲ್ಯಮಾಪನದ ವಿವಿಧ ವಿಧಾನಗಳ ಮೂಲಕ ಮಾಡಿದ ಮೌಲ್ಯಮಾಪನಕ್ಕೆ ಅನುಸಾರವಾಗಿ ಶಿಕ್ಷಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದುದರ ಆಧಾರದ ಮೇಲೆ ಪದವಿಗಳನ್ನು, ಡಿಪ್ಲೋಮೋಗಳನ್ನು ಪ್ರಮಾಣಪತ್ರಗಳನ್ನು ಮತ್ತು ಯಶೋಪತ್ರ ಪ್ರದಾನದಂಥ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(vi) ವಿದ್ಯಾರ್ಥಿಗಳಿಗೆ, ಬೋಧಕ ವೃಂದದ (ಫ್ಯಾಕಲ್ಟಿ) ಸದಸ್ಯರಿಗೆ ಮತ್ತು ಇತರರಿಗೆ ನಿರ್ದಿಷ್ಟ ಶೈಕ್ಷಣಿಕ ಮತ್ತು ಸಂಶೋಧನಾ ಕಾರ್ಯಕ್ರಮಗಳನ್ನು, ತರಬೇತಿ ಕಾರ್ಯಕ್ರಮಗಳನ್ನು ಮತ್ತು ವಿನಿಮಯ ಕಾರ್ಯಕ್ರಮಗಳನ್ನು ಪರಿಕಲ್ಪಿಸಲು, ವಿನ್ಯಾಸಗೊಳಿಸಲು, ಅಭಿವೃದ್ಧಿಪಡಿಸಲು ಇತರ ಯಾವುದೇ ವಿಶ್ವವಿದ್ಯಾಲಯಗಳು, ಸಂಶೋಧನಾ ಸಂಸ್ಥೆಗಳು, ಲಾಭರಹಿತ ಸಂಸ್ಥೆಗಳು, ಕೈಗಾರಿಕಾ ಸಂಸ್ಥೆಗಳು, ವೃತ್ತಿಪರ ಸಂಸ್ಥೆಗಳು ಅಥವಾ ಇತರ ಸಂಸ್ಥೆಗಳೊಂದಿಗೆ ಸಹಯೋಗವನ್ನು ಹೊಂದುವುದು;

(vii) ಉಪನ್ಯಾಸ ಮಾಲಿಕೆಗಳು, ವಿಚಾರ ಸಂಕಿರಣಗಳು, ಸಮ್ಮೇಳನಗಳು, ಕಾರ್ಯಾಂಗ ಶಿಕ್ಷಣ ಕಾರ್ಯಕ್ರಮಗಳು, ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳು, ಪ್ರಕಟಣೆಗಳು ಮತ್ತು ತರಬೇತಿ ಕಾರ್ಯಕ್ರಮಗಳು ಮತ್ತು ಕಾರ್ಯಸೂಚಿಗಳ ಮೂಲಕ ಜ್ಞಾನ ಪ್ರಸಾರ ಮಾಡುವುದು ಮತ್ತು ಶಿಕ್ಷಣ ಮತ್ತು ತತ್ಸಂಬಂಧಿತ ಅಭಿವೃದ್ಧಿ ಕ್ಷೇತ್ರಗಳ ವಿಷಯಗಳ ಬಗ್ಗೆ ಸಾರ್ವಜನಿಕ ಚರ್ಚೆಯನ್ನು ಏರ್ಪಡಿಸುವುದು;

(viii) ರಾಜ್ಯ ಸರ್ಕಾರದ ಪೂರ್ವ ಅನುಮತಿಯೊಂದಿಗೆ, ಉತ್ತಮ ಗುಣಮಟ್ಟದ ಇತರ ಯಾವುವೇ ಸಂಸ್ಥೆಗಳೊಂದಿಗೆ ಸಹಭಾಗಿಗಳಾಗಿ ವಿಶ್ವವಿದ್ಯಾಲಯದ ಬೋಧಕ ವೃಂದ (ಫ್ಯಾಕಲ್ಟಿ) ಮತ್ತು ಸಂಶೋಧಕರ ಅಭಿವೃದ್ಧಿ ಮತ್ತು ತರಬೇತಿಗಾಗಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು

(ix) ರಾಜ್ಯ ಸರ್ಕಾರದ ಪೂರ್ವ ಅನುಮೋದನೆಯೊಡನೆ, ಯಾವುದೇ ಸಂಸ್ಥೆಯೊಂದಿಗೆ ಸಹಯೋಗ ಹೊಂದಿ ಸಂಶೋಧನೆಯನ್ನು ಮತ್ತು ಹೊಸತನವನ್ನು ಬೆಳಕಿಗೆ ತರುವುದು;

(x) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದಕ್ಕಾಗಿ ಮತ್ತು ಉತ್ತೇಜಿಸುವುದಕ್ಕಾಗಿ ಅವಶ್ಯಕವಾದ ಮತ್ತು ಯುಕ್ತವಾದ ಕ್ರಮಗಳನ್ನು ಕೈಗೊಳ್ಳುವುದು;

(xi) ಶಿಕ್ಷಣ ಮತ್ತು ಇತರ ಅಭಿವೃದ್ಧಿ ವಲಯಗಳನ್ನು ವಿಸ್ತರಿಸುವುದಕ್ಕಾಗಿ ಸರ್ಕಾರವು ಅನುಮೋದಿಸಬಹುದಾದಂತೆ ಯಾವುವೇ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದು.

8. **ವಿಶ್ವವಿದ್ಯಾಲಯದ ಅಧಿಕಾರಗಳು.**- ವಿಶ್ವವಿದ್ಯಾಲಯವು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗೆ ಅನುಸಾರವಾಗಿ ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿರ್ಧರಿಸಬಹುದಾದಂತೆ ವಿಶ್ವವಿದ್ಯಾಲಯದ ಸ್ಥಾಪನೆಯ ದಿನಾಂಕದಿಂದ ಐದು ವರ್ಷಗಳ ತರುವಾಯ ಕ್ಯಾಂಪಸ್ಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಕರ್ನಾಟಕದಲ್ಲಿ ಸ್ಥಾಪಿಸುವುದು ಮತ್ತು ನಿರ್ವಹಿಸುವುದು;

(ii) ವಿಶ್ವವಿದ್ಯಾಲಯದ ಉದ್ದೇಶವನ್ನು ಕಾರ್ಯರೂಪಕ್ಕೆ ತರುವಲ್ಲಿ ಅಗತ್ಯವಾಗಬಹುದಾದ ಅಥವಾ ಕಾರ್ಯಸಾಧ್ಯವಾಗಬಹುದಾದ ಎಲ್ಲಾ ಅಂಥ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು;

(iii) ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಮತ್ತು ಷರತ್ತುಗಳಿಗೊಳಪಟ್ಟು ಪದವಿಗಳು ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರದಾನಮಾಡುವುದು;

(iv) ಪರಿನಿಯಮಗಳನುಸಾರವಾಗಿ ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿ ವೇತನಗಳು ಮತ್ತು ಬಹುಮಾನಗಳು, ಅವಾರ್ಡುಗಳು, ಪಾರಿತೋಷಕಗಳು ಇತ್ಯಾದಿಗಳನ್ನು ಸ್ಥಾಪಿಸುವುದು ಮತ್ತು ನೀಡುವುದು;

(v) ಪರಿನಿಯಮಗಳಲ್ಲಿ ಅಥವಾ ಸಂದರ್ಭಾನುಸಾರವಾಗಿ ನಿಯಮಗಳಲ್ಲಿ ನಿಗದಿಪಡಿಸಬಹುದಾದ ಅಂಥ ಶುಲ್ಕಗಳು, ಬಿಲ್ಲುಗಳು, ಖರೀದಿ ಪಟ್ಟಿಗಳನ್ನು ಕೇಳಿಪಡೆದುಕೊಳ್ಳುವುದು ಮತ್ತು ಸ್ವೀಕರಿಸುವುದು ಹಾಗೂ ಚಾರ್ಜುಗಳನ್ನು ವಸೂಲು ಮಾಡುವುದು;

(vi) ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಪಠ್ಯೇತರ ಚಟುವಟಿಕೆಗಳಿಗೆ ಉಪಬಂಧಗಳನ್ನು ಕಲ್ಪಿಸುವುದು;

(vii) ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಕ್ಯಾಂಪಸುಗಳ, ಪ್ರಾದೇಶಿಕ ಕೇಂದ್ರಗಳ, ಅಧ್ಯಯನ ಕೇಂದ್ರಗಳ ಫ್ಯಾಕಲ್ಟಿ, ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವುದು;

(viii) ವಿಶ್ವವಿದ್ಯಾಲಯದ ಅಥವಾ ಒಂದು ಘಟಕ ಕಾಲೇಜಿನ ಅಥವಾ ಕ್ಯಾಂಪಸ್ಸಿನ, ಪ್ರಾದೇಶಿಕ ಕೇಂದ್ರದ ಮತ್ತು ಅಧ್ಯಯನ ಕೇಂದ್ರದ ಉದ್ದೇಶಕ್ಕಾಗಿ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದಿರುವ, ಯಾವುದೇ ರೀತಿಯ ಸ್ವಯಂ ದೇಣಿಗೆಗಳು ಮತ್ತು ಕೊಡುಗೆಗಳನ್ನು ಸ್ವೀಕರಿಸುವುದು ಮತ್ತು ಟ್ರಸ್ಟ್ ಮತ್ತು ದತ್ತಿ ಸ್ವತ್ತುಗಳೂ ಸೇರಿದಂತೆ, ಯಾವುದೇ ಚರ ಅಥವಾ ಸ್ಥಿರ ಸ್ವತ್ತನ್ನು ಆರ್ಜಿಸುವುದು, ಹೊಂದಿರುವುದು, ನಿರ್ವಹಿಸುವುದು, ನಡೆಸುವುದು ಮತ್ತು ಹಸ್ತಾಂತರ ಮಾಡುವುದು;

(ix) ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸಿಕೊಂಡು ಬರುವುದು ಹಾಗೂ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ ವಿದ್ಯಾರ್ಥಿಗಳಿಗೆ ವಸತಿ ಸ್ಥಳಗಳನ್ನು ಗುರುತಿಸುವುದು;

(x) ವಸತಿಯ ಮೇಲ್ವಿಚಾರಣೆ ಮಾಡುವುದು ಮತ್ತು ನಿಯಂತ್ರಣ ಮಾಡುವುದು ಹಾಗೂ ವಿದ್ಯಾರ್ಥಿಗಳು ಮತ್ತು ಎಲ್ಲಾ ಪ್ರವರ್ಗಗಳ ಸಿಬ್ಬಂದಿಗಳಲ್ಲಿ ಶಿಸ್ತು ನಿಯಂತ್ರಣ ಮಾಡುವುದು ಮತ್ತು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ನಡತೆ ಸಂಹಿತೆಯನ್ನು ರೂಪಿಸುವುದೂ ಒಳಗೊಂಡಂತೆ, ಅಂಥ ಸಿಬ್ಬಂದಿಗಳ ಸೇವಾಷರತ್ತುಗಳನ್ನು ನಿರೂಪಿಸುವುದು;

(xi) ಶೈಕ್ಷಣಿಕ, ಆಡಳಿತಾತ್ಮಕ ಮತ್ತು ಬೆಂಬಲ ಸಿಬ್ಬಂದಿಯ ಹುದ್ದೆಗಳನ್ನು ಮತ್ತು ಇತರ ಅವಶ್ಯ ಹುದ್ದೆಗಳನ್ನು ಸೃಜಿಸುವುದು;

(xii) ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ಉದ್ದೇಶಗಳಿಗಾಗಿ ಇತರ ವಿಶ್ವವಿದ್ಯಾಲಯಗಳೊಡನೆ ಸಹಕರಿಸುವುದು ಮತ್ತು ಸಹಯೋಗ ಹೊಂದುವುದು;

(xiii) ಶಿಕ್ಷಕರಿಗೆ, ಪಠ್ಯ ಬರಹಗಾರರಿಗೆ, ಮೌಲ್ಯಮಾಪಕರಿಗೆ ಮತ್ತಿತರ ಶೈಕ್ಷಣಿಕ ಸಿಬ್ಬಂದಿಗೆ ಪುನರ್ಮನನ ವ್ಯಾಸಂಗಕ್ರಮಗಳು, ಪರಿಚಯಾತ್ಮಕ ವ್ಯಾಸಂಗ ಕ್ರಮಗಳು, ಕಾರ್ಯಾಗಾರಗಳು, ವಿಚಾರಗೋಷ್ಠಿಗಳು ಮತ್ತಿತರ ಕಾರ್ಯಕ್ರಮಗಳನ್ನು ಏರ್ಪಡಿಸುವುದು ಮತ್ತು ನಡೆಸುವುದು;

(xiv) ಶೈಕ್ಷಣಿಕ ಪರಿಷತ್ತಿನ ಅನುಮೋದನೆಯೊಂದಿಗೆ ವಿಶ್ವವಿದ್ಯಾಲಯಕ್ಕೆ ಅಥವಾ ಘಟಕ ಕಾಲೇಜಿಗೆ, ಪ್ರಾದೇಶಿಕ ಕೇಂದ್ರಗಳಿಗೆ, ಅಧ್ಯಯನ ಕೇಂದ್ರಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮಾನಕ ಗುಣಮಟ್ಟಗಳನ್ನು ನಿರ್ಧರಿಸುವುದು ಮತ್ತು ಈ ಅಧಿನಿಯಮದಲ್ಲಿ ಕಲ್ಪಿಸಿದ ವ್ಯಾಪ್ತಿಗಿಂತ ಕಡಿಮೆಯಿಲ್ಲದಂತೆ ಕರ್ನಾಟಕದ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನೀಡುವುದು;

(xv) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಕಾರ್ಯರೂಪಕ್ಕೆ ತರಲು ಅವಶ್ಯವಾಗಬಹುದಾದಂಥ ಇತರ ಎಲ್ಲಾ ಕ್ರಮಗಳನ್ನು ಅಥವಾ ಕಾರ್ಯಗಳನ್ನು, ಅವು ಮೇಲೆ ಹೇಳಿದ ಅಧಿಕಾರಗಳಿಗೆ ಪ್ರಾಸಂಗಿಕವಾಗಿರಲಿ ಅಥವಾ ಇಲ್ಲದಿರಲಿ, ಕೈಗೊಳ್ಳುವುದು;

(xvi) ಪರೀಕ್ಷೆಗಳ ಆಧಾರದ ಮೇಲೆ ಅಥವಾ ಸರ್ಕಾರದಿಂದ ಅನುಮೋದಿತವಾದ ಇತರ ಯಾವುದೇ ಮೌಲ್ಯಮಾಪನ ವಿಧಾನದ ಆಧಾರದ ಮೇಲೆ ನೀಡಲು ಪದವಿಗಳು, ಡಿಪ್ಲೋಮಾಗಳು, ಪ್ರಮಾಣಪತ್ರಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(xvii) ಫಿಲಂಗಳು, ಕ್ಯಾಸೆಟ್‌ಗಳು, ಧ್ವನಿಸುರುಳಿಗಳು, ದೃಶ್ಯಸುರುಳಿಗಳು, ಸಿ.ಡಿ., ವಿ.ಸಿ.ಡಿ. ಪೆನ್ ಡ್ರೈವ್‌ಗಳು ಮತ್ತು ಇತರ ತಂತ್ರಾಂಶಗಳೂ ಹಾಗೂ ಇತರ ಸಂಬಂಧಿತ ವಿದ್ಯುನ್ಮಾನ ಮತ್ತು ಮುದ್ರಣ ಮಾಧ್ಯಮ ಸೇರಿದಂತೆ ಬೋಧಕ ಸಾಮಗ್ರಿಗಳನ್ನು ತಯಾರಿಸುವುದಕ್ಕಾಗಿ ಅವಕಾಶ ಕಲ್ಪಿಸುವುದು;

(xviii) ಪ್ರಬಂಧಕ ಮಂಡಳಿಯ ಅನುಮೋದನೆಯೊಡನೆ ವಿಶ್ವವಿದ್ಯಾಲಯದ ಉದ್ದೇಶಗಳಿಗಾಗಿ ವಿಶ್ವವಿದ್ಯಾಲಯದ ಸ್ವತ್ತುಗಳನ್ನು ಭದ್ರತೆಯಾಗಿ ನೀಡಿ ಅಥವಾ ನೀಡದೆ ಹಣವನ್ನು ಪಡೆಯುವುದು, ಸಂಗ್ರಹಿಸುವುದು, ಚಂದಾದಾರರಾಗುವುದು ಮತ್ತು ಸಾಲ ಪಡೆಯುವುದು;

(xix) ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುದೇ ಇತರ ಶೈಕ್ಷಣಿಕ ಸಂಸ್ಥೆಗಳ ಆಡಳಿತವನ್ನು ವಶಪಡಿಸಿಕೊಳ್ಳುವುದು ಮತ್ತು ತೆಗೆದುಕೊಳ್ಳುವುದು ಹಾಗೂ ನಡೆಸುವುದು ;

(xx) ವ್ಯವಸ್ಥಾಪನಾ ಮಂಡಳಿ ಪೂರ್ವಾನುಮೋದನೆಯೊಂದಿಗೆ ಸ್ವತ್ತುಗಳನ್ನು ಆರ್ಜಿಸುವುದು;

(xxi) ವಿಶ್ವವಿದ್ಯಾಲಯದ ಮೇಲಿನ ಉದ್ದೇಶಗಳಿಗೆ ಸಂಬಂಧಿಸಿದ ಅಥವಾ ಪ್ರಾಸಂಗಿಕವಾದ ಯಾವುದೇ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು.

**9. ವಿಶ್ವವಿದ್ಯಾಲಯವು ಎಲ್ಲಾ ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರದ ಎಲ್ಲರಿಗೂ ಮುಕ್ತವಾಗಿರತಕ್ಕದ್ದು.-** ವಿಶ್ವವಿದ್ಯಾಲಯವು ಎಲ್ಲಾ ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರದ ಎಲ್ಲಾ ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು. ವಿಶ್ವವಿದ್ಯಾಲಯದ ಪ್ರವೇಶಗಳು ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರದ ಎಲ್ಲಾ ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು. ಎಲ್ಲಾ ಪ್ರವೇಶಗಳನ್ನು ಅರ್ಹತಾ ಪರೀಕ್ಷೆಗಳಲ್ಲಿನ ಅರ್ಹತೆಯ ಆಧಾರದ ಮೇಲೆ ಮಾಡತಕ್ಕದ್ದು:

ಪರಂತು, ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳ ಪ್ರವೇಶದಲ್ಲಿ ಶೇಕಡಾ ನಲವತ್ತರಷ್ಟನ್ನು ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ಮೀಸಲಿಡತಕ್ಕದ್ದು ಮತ್ತು ಪ್ರವೇಶಗಳನ್ನು ಕೇಂದ್ರ ಸರ್ಕಾರವು ಅಥವಾ ರಾಜ್ಯ ಸರ್ಕಾರವು ಅಥವಾ ಸಂದರ್ಭಾನುಸಾರವಾಗಿ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡತಕ್ಕದ್ದು ಮತ್ತು ಸೀಟುಗಳನ್ನು ಅರ್ಹತೆ ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ರೂಪಿಸುವ ಮೀಸಲಾತಿ ನೀತಿಗೆ ಅನುಸಾರವಾಗಿ ಹಂಚಿಕೆ ಮಾಡತಕ್ಕದ್ದು:

ಮತ್ತು ಪರಂತು, ಯಾವುದೇ ಕೋರ್ಸಿನಲ್ಲಿ ಹತ್ತಕ್ಕಿಂತ ಕಡಿಮೆ ಸೀಟುಗಳು ಇರುವಲ್ಲಿ, ಸ್ನಾತಕೋತ್ತರ, ಪಿಹೆಚ್‌ಡಿ ಮತ್ತು ಸಂಶೋಧನೆ ಇಂಥ ಕೋರ್ಸುಗಳನ್ನು ಒಟ್ಟಿಗೆ ಒಂದುಗೂಡಿಸುವ ಮೂಲಕ ಮೀಸಲಿಡತಕ್ಕದ್ದು ಮತ್ತು ಯಾವುದೇ ಕೋರ್ಸಿನಲ್ಲಿ ಮೂರು ಸೀಟುಗಳಿಗಿಂತ ಕಡಿಮೆ ಇರುವಲ್ಲಿ, ಅವುಗಳನ್ನು ಸರದಿ ಸುತ್ತಿನಲ್ಲಿ ಮೀಸಲಿಡತಕ್ಕದ್ದು.

**10. ರಾಷ್ಟ್ರೀಯ ಅಧಿಮಾನ್ಯತೆ.-** ವಿಶ್ವವಿದ್ಯಾಲಯವು ಪ್ರಾರಂಭವಾದ ತರುವಾಯ ಆದಷ್ಟು ಬೇಗನೆ ಸಂಬಂಧಪಟ್ಟ ಶಾಸನಾತ್ಮಕ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳಿಂದ ಅಧಿಮಾನ್ಯತೆಯನ್ನು ಕೋರತಕ್ಕದ್ದು ಮತ್ತು ಈ ವಿಶ್ವವಿದ್ಯಾಲಯಗಳು ನಡೆಸುವ ಎಲ್ಲಾ ವ್ಯಾಸಂಗ ಕ್ರಮಗಳು ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ವಿನಿಯಮಗಳಿಗೆ ಅನುಸಾರವಾಗಿ ಇರತಕ್ಕದ್ದು.

11. ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು.- ಪ್ರಾಯೋಜಕ ಸಂಸ್ಥೆಯು ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದಂತೆ ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಇವುಗಳಲ್ಲಿ ಪ್ರತಿಯೊಂದನ್ನು, ಪ್ರಾಯೋಜಕ ಸಂಸ್ಥೆಯು ತನ್ನ ವಿವೇಚನಾನುಸಾರ ಚಲಾಯಿಸಬಹುದು. [illegible]

(i) ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಮನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(ii) ವಿಶ್ವವಿದ್ಯಾಲಯದ ಪ್ರಥಮ ಪ್ರಬಂಧಕ ಮಂಡಳಿಯನ್ನು ರಚಿಸುವುದು

(iii) ಪ್ರಬಂಧಕ ಮಂಡಳಿಯ ಪ್ರಥಮ ಅಧ್ಯಕ್ಷರನ್ನು ನಾಮನಿರ್ದೇಶಿಸುವುದು;

(iv) ಪ್ರಬಂಧಕ ಮಂಡಳಿಯ ಸದಸ್ಯರಾಗಿ ಮೂರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(v) ವ್ಯವಸ್ಥಾಪನಾ ಮಂಡಳಿ ಸದಸ್ಯರಾಗಿ ಇಬ್ಬರು ವ್ಯಕ್ತಿಗಳನ್ನು ನಾಮ ನಿರ್ದೇಶಿಸುವುದು;

(vi) ವಿಶ್ವವಿದ್ಯಾಲಯದ ದತ್ತಿ ನಿಧಿಗೆ ದೇಣಿಗೆ ನೀಡಲು ನಿಧಿ ಮೂಲಗಳನ್ನು ನಿರ್ಧರಿಸುವುದು;

(vii) ವಿಶ್ವವಿದ್ಯಾಲಯದ ಹಣದ ವಿನಿಯೋಗ ಮತ್ತು ವೆಚ್ಚ ಮಾಡುವುದನ್ನು ನಿರ್ಧರಿಸುವುದು;

(viii) ಈ ಅಧಿನಿಯಮದಲ್ಲಿ ಉಪಬಂಧಿಸಿರುವ ವಿಧಾನದಲ್ಲಿ ಪ್ರಬಂಧಕ ಮಂಡಳಿಯ ಸಭೆಯಲ್ಲಿಯ ವಿವಾದಗಳನ್ನು ಬಗೆಹರಿಸುವುದು.

## ಅಧ್ಯಾಯ – III

### ವಿಶ್ವವಿದ್ಯಾಲಯದ ಅಧಿಕಾರಿಗಳು

**12. ವಿಶ್ವವಿದ್ಯಾಲಯದ ಅಧಿಕಾರಿಗಳು.–** ಈ ಮುಂದಿನವರು ವಿಶ್ವವಿದ್ಯಾಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:–

(i) ಸಂದರ್ಶಕರು;

(ii) ಸಹ–ಸಂದರ್ಶಕರು;

(iii) ಕುಲಾಧಿಪತಿಗಳು;

(iv) ಸಹ–ಕುಲಾಧಿಪತಿಗಳು;

(v) ಕುಲಪತಿಗಳು;

(vi) ಸಹಕುಲಪತಿಗಳು;

(vii) ವ್ಯಾಸಂಗ ವಿಭಾಗದ ಡೀನ್‌ಗಳು;

(viii) ಕುಲಸಚಿವರು;

(ix) ಹಣಕಾಸು ಅಧಿಕಾರಿ; ಮತ್ತು

(x) ಪರಿನಿಯಮಗಳ ಮೂಲಕ ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಘೋಷಿಸಬಹುದಾದಂಥ ಇತರ ಅಧಿಕಾರಿಗಳು.

**13. ಸಂದರ್ಶಕರು.–** (1) ಕರ್ನಾಟಕದ ಘನತೆವೆತ್ತ ರಾಜ್ಯಪಾಲರು ವಿಶ್ವವಿದ್ಯಾಲಯದ ಸಂದರ್ಶಕರಾಗಿರತಕ್ಕದ್ದು ಮತ್ತು ಸಂದರ್ಶಕರು ವಿಶ್ವವಿದ್ಯಾಲಯದ ಕಾರ್ಯನಿರ್ವಹಣೆಯ ಸುಧಾರಣೆಗಾಗಿ ಸಲಹೆಗಳನ್ನು ನೀಡಬಹುದು.

(2) ಸಂದರ್ಶಕರು, ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಸಂದರ್ಶಕರು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ವ್ಯವಹಾರಗಳಿಗೆ ಸಂಬಂಧಿಸಿದಂತೆ, ಯಾವುದೇ ಪತ್ರ ಅಥವಾ ಮಾಹಿತಿಯನ್ನು ತರಿಸಿಕೊಳ್ಳುವುದು.

(ii) ಸಂದರ್ಶಕರು, ಅವರು ಸ್ವೀಕರಿಸಿದ ಮಾಹಿತಿಯ ಆಧಾರದ ಮೇಲೆ ವಿಶ್ವವಿದ್ಯಾಲಯಗಳ ಯಾವುದೇ ಪ್ರಾಧಿಕಾರವು ಮಾಡಿದ ಯಾವುದೇ ಆದೇಶ, ನಡೆಸಿದ ವ್ಯವಹರಣೆಗಳು ಅಥವಾ ಕೈಗೊಂಡ ತೀರ್ಮಾನಗಳು, ಈ ಅಧಿನಿಯಮ, ವಿನಿಯಮಗಳು ಅಥವಾ ನಿಯಮಗಳಿಗೆ ಪೂರಕವಾಗಿಲ್ಲವೆಂದು ಮನಗಂಡರೆ ಅವರು ವಿಶ್ವವಿದ್ಯಾಲಯದ ಹಿತಾಸಕ್ತಿಯಿಂದ ತಾವು ಸೂಕ್ತವೆಂದು ಭಾವಿಸಬಹುದಾದಂಥ

ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಹಾಗೆ ಹೊರಡಿಸಿದ ನಿರ್ದೇಶನಗಳನ್ನು ಸಂಬಂಧಪಟ್ಟವರೆಲ್ಲರೂ ಪಾಲಿಸತಕ್ಕದ್ದು.

14. **ಸಹ-ಸಂದರ್ಶಕರು.**- (1) ಕರ್ನಾಟಕ ಸರ್ಕಾರದ ಮಾನ್ಯ ಉನ್ನತ ಶಿಕ್ಷಣ ಮಂತ್ರಿಗಳು ವಿಶ್ವವಿದ್ಯಾಲಯದ ಸಹ-ಸಂದರ್ಶಕರಾಗಿರತಕ್ಕದ್ದು.

(2) ಸಂದರ್ಶಕರ ಅನುಪಸ್ಥಿತಿಯಲ್ಲಿ ಸಹ-ಸಂದರ್ಶಕರು ಪದವಿಗಳನ್ನು ಮತ್ತು ಡಿಪ್ಲೋಮಾಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

15 **ಕುಲಾಧಿಪತಿಗಳು.**- (1) ಕುಲಾಧಿಪತಿಯವರನ್ನು ಪ್ರಾಯೋಜಕ ಸಂಸ್ಥೆಯು ನೇಮಿಸತಕ್ಕದ್ದು.

(2) ಪ್ರಾಯೋಜಕ ಸಂಸ್ಥೆಯ ನಾಮನಿರ್ದೇಶಿತನು ಮೊದಲನೇ ಕುಲಾಧಿಪತಿಗಳಾಗಿರತಕ್ಕದ್ದು, ಅವರು ತಮ್ಮ ಜೀವನಪರ್ಯಂತ ಅಥವಾ ಅವರು ತಮ್ಮ ಪದವನ್ನು ಬಿಟ್ಟುಕೊಡುವವರೆಗೆ ಕುಲಾಧಿಪತಿಗಳಾಗಿ ಪದಧಾರಣ ಮಾಡಿರತಕ್ಕದ್ದು.

(3) ತದನಂತರದ ಕುಲಾಧಿಪತಿಗಳು, ಪ್ರಾಯೋಜಕ ಸಂಸ್ಥೆಯ ವ್ಯವಸ್ಥಾಪನಾ ಸಮಿತಿಯ ಸದಸ್ಯರಾಗಿರತಕ್ಕದ್ದು.

(4) ಪ್ರಾಯೋಜಕ ಸಂಸ್ಥೆಯು ಸಹ-ಕುಲಾಧಿಪತಿಯನ್ನು ನೇಮಿಸಬಹುದು.

(5) ಹಾಗೆ ನೇಮಕಗೊಂಡ ತದನಂತರದ ಕುಲಾಧಿಪತಿಗಳು ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ಪದಧಾರಣ ಮಾಡತಕ್ಕದ್ದು.

(6) ಕುಲಾಧಿಪತಿಗಳು ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳ ಅಡಿಯಲ್ಲಿ ಅವರಿಗೆ ಪ್ರದಾನ ಮಾಡಬಹುದಾದಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು, ಅವುಗಳಲ್ಲಿ ಈ ಮುಂದಿನ ಅಧಿಕಾರಗಳು ಒಳಗೊಂಡಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುವುದು;

(ii) ಸಂದರ್ಶಕರ ಮತ್ತು ಸಹ-ಸಂದರ್ಶಕರಿಬ್ಬರ ಗೈರುಹಾಜರಿಯಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಘಟಿಕೋತ್ಸವಗಳಲ್ಲಿ ಅಧ್ಯಕ್ಷತೆಯನ್ನು ವಹಿಸುವುದು;

(iii) ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವುದು;

(iv) ಈ ಅಧಿನಿಯಮ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಅನುಸಾರವಾಗಿ ಸಹ-ಕುಲಾಧಿಪತಿಗಳು, ಕುಲಪತಿಗಳನ್ನು ನೇಮಿಸುವುದು ಅಥವಾ ಮನರ್ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(v) ಈ ಅಧಿನಿಯಮದ 16ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ನಾಮನಿರ್ದೇಶಕ ಸಮಿತಿಯ ಸದಸ್ಯರಾಗಿ ಒಬ್ಬ ವ್ಯಕ್ತಿಯನ್ನು ನಾಮನಿರ್ದೇಶನ ಮಾಡುವುದು;

(vi) ಸಹಕುಲಪತಿಗಳು, ಡೀನ್, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿಗಳ ನೇಮಕಾತಿಯನ್ನು ಮೂರ್ಾನುಮೋದಿಸುವುದು;

(vii) ಪ್ರಬಂಧಕ ಮಂಡಳಿಯ ಸದಸ್ಯರನ್ನಾಗಿ ಇಬ್ಬರು ಶಿಕ್ಷಣ ತಜ್ಞರನ್ನು ನಾಮನಿರ್ದೇಶಿಸುವುದು;

(viii) ಮೊದಲ ಸಹಕುಲಪತಿಗಳನ್ನು ಹಾಗೂ ಹಣಕಾಸು ಅಧಿಕಾರಿಯನ್ನು ನೇಮಿಸುವುದು;

(ix) ಮೊದಲ ವ್ಯವಸ್ಥಾಪನಾ ಮಂಡಳಿ, ಹಣಕಾಸು ಸಮಿತಿ ಸಂಶೋಧನಾ ಪರಿಷತ್ತು ಹಾಗೂ ಶೈಕ್ಷಣಿಕ ಪರಿಷತ್ತುಗಳನ್ನು ರಚಿಸುವುದು;

(x) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ ಕಾರ್ಯಸೂಚಿ ವಿಷಯಗಳನ್ನು ಮೂರ್ಾನುಮೋದಿಸುವುದು;

(xi) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ (ಪ್ರಬಂಧಕ ಮಂಡಳಿಯ ಸಭೆಯಲ್ಲಿ ಉಂಟಾದ ವಿವಾದಗಳನ್ನು ಹೊರತುಪಡಿಸಿ) ವಿವಾದಗಳನ್ನು ಪರಿಹರಿಸುವುದು.

(7) ಪದಾಧಿಕಾರಿ ಅಥವಾ ಸಂಸ್ಥೆ ಮತ್ತು ವಿಶ್ವವಿದ್ಯಾಲಯದ ಯಾವುದೇ ಇತರ ಪದಾಧಿಕಾರಿ ಅಥವಾ ಸಂಸ್ಥೆಯ ನಡುವೆ ವಿವಾದಗಳು ಉಂಟಾದಲ್ಲಿ, ಆ ವಿವಾದವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿವಾದದ ಸಂಬಂಧದಲ್ಲಿ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**16. ಸಹ-ಕುಲಾಧಿಪತಿಗಳು.-** (1) ಪರಿನಿಯಮಗಳಲ್ಲಿ ಹೇಳಬಹುದಾದ ಅಂಥ ಇತರ ನಿಬಂಧನೆಗಳು ಮತ್ತು ಷರತ್ತುಗಳಿಗೆ ಒಳಪಟ್ಟು ಪ್ರಾಯೋಜಕ ಸಂಸ್ಥೆಯು ನಿಯಮಿಸಿದ ಅವಧಿಗಾಗಿ, ಪ್ರಾಯೋಜಕ ಸಂಸ್ಥೆಯು ಸಹ-ಕುಲಾಧಿಪತಿಗಳನ್ನು ನೇಮಕ ಮಾಡತಕ್ಕದ್ದು.

(2) ಸಹ-ಕುಲಾಧಿಪತಿಯು, ಕುಲಾಧಿಪತಿಯ ಗೈರುಹಾಜರಿಯಲ್ಲಿ ಆತನ ಎಲ್ಲಾ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಕುಲಾಧಿಪತಿಯ ಲಿಖಿತ ಅನುಮೋದನೆಯೊಂದಿಗೆ ಆತನಿಗೆ ಯಾವುದೇ ಹೆಚ್ಚುವರಿ ಕರ್ತವ್ಯಗಳನ್ನು ವಹಿಸತಕ್ಕದ್ದು.

(3) ಸಹ-ಕುಲಾಧಿಪತಿಯು, ಕುಲಾಧಿಪತಿಯ ಗೈರು ಹಾಜರಿಯಲ್ಲಿ ಎಲ್ಲಾ ಸಮಿತಿಗಳು, ಸಭೆಗಳು ಮತ್ತು ಘಟಿಕೋತ್ಸವದ ಅಧ್ಯಕ್ಷತೆ ವಹಿಸತಕ್ಕದ್ದು.

**17. ಕುಲಪತಿಗಳು.-** (1) (2)ನೇ ಉಪಪ್ರಕರಣದ ಉಪಬಂಧಗಳಿಗೆ ಅನುಸಾರವಾಗಿ ನಾಮನಿರ್ದೇಶಕ ಸಮಿತಿಯು ಶಿಫಾರಸ್ಸು ಮಾಡಿದ ಮೂರು ವ್ಯಕ್ತಿಗಳ ಪೈಕಿಯಿಂದ ಒಬ್ಬರನ್ನು ಮೂರು ವರ್ಷಗಳ ಅವಧಿಗಾಗಿ ಕುಲಪತಿಗಳನ್ನಾಗಿ, ಪರಿನಿಯಮಗಳಲ್ಲಿ ನಿಯಮಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರು ನೇಮಿಸತಕ್ಕದ್ದು. ಮೂರು ವರ್ಷಗಳ ಅವಧಿಯು ಮುಗಿದ ತರುವಾಯ, ಇದನ್ನು ಮೂರು ವರ್ಷಗಳ ಮತ್ತೊಂದು ಅವಧಿಗೆ ನವೀಕರಿಸಬಹುದು:

ಪರಂತು, ಕುಲಪತಿಯವರು, ತಮ್ಮ ಅವಧಿ ಮುಗಿದ ನಂತರವೂ ಹೊಸ ಕುಲಪತಿಯವರು ಸೇರಿಕೊಳ್ಳುವವರೆಗೆ ಪದದಲ್ಲಿ ಮುಂದುವರೆಯತಕ್ಕದ್ದು. ಆದಾಗ್ಯೂ ಈ ಅವಧಿಯು ಯಾವುದೇ ಸಂದರ್ಭದಲ್ಲಿ ಒಂದು ವರ್ಷವನ್ನು ಮೀರತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಹೇಳಿರುವ ನಾಮನಿರ್ದೇಶಕ ಸಮಿತಿಯಲ್ಲಿ ಈ ಮುಂದಿನ ವ್ಯಕ್ತಿಗಳು ಇರತಕ್ಕದ್ದು, ಎಂದರೆ:-

(i) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಒಬ್ಬ ವ್ಯಕ್ತಿ;

(ii) ಪ್ರಬಂಧಕ ಮಂಡಳಿಯ ಇಬ್ಬರು ನಾಮ ನಿರ್ದೇಶಿತರು, ಇವರಲ್ಲಿ ಒಬ್ಬರನ್ನು ಪ್ರಬಂಧಕ ಮಂಡಳಿಯು ಸಮಿತಿಯ ಸಂಚಾಲಕರೆಂದು ನಾಮನಿರ್ದೇಶಿಸತಕ್ಕದ್ದು.

(3) ನಾಮನಿರ್ದೇಶನ ಸಮಿತಿಯು, ಅರ್ಹತೆಯ ಆಧಾರದ ಮೇಲೆ ಕುಲಪತಿಯ ಹುದ್ದೆಗೆ ಸೂಕ್ತವಾದ ಮೂರು ವ್ಯಕ್ತಿಗಳ ಹೆಸರನ್ನು ಶಿಫಾರಸ್ಸು ಮಾಡತಕ್ಕದ್ದು ಮತ್ತು ಅದನ್ನು ಪ್ರತಿಯೊಬ್ಬ ವ್ಯಕ್ತಿಯ ವಿದ್ಯಾರ್ಹತೆ ಮತ್ತಿತರ ವಿಶಿಷ್ಟ ಪ್ರಶಸ್ತಿಗಳನ್ನು ತಿಳಿಸುವ ಒಂದು ಸಂಕ್ಷಿಪ್ತ ವರದಿಯೊಂದಿಗೆ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು.

(4) ಕುಲಪತಿಯವರು ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಾಹಕ ಮತ್ತು ಶೈಕ್ಷಣಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣವನ್ನು ಚಲಾಯಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯದ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೊಳಿಸತಕ್ಕದ್ದು:

ಪರಂತು, ಶಿಕ್ಷಕರ ನೇಮಕಾತಿಯನ್ನು ಹೊರತುಪಡಿಸಿ ಕೂಡಲೇ ಕ್ರಮವನ್ನು ಕೈಗೊಳ್ಳಬೇಕಾದ ತುರ್ತು ಸ್ವರೂಪದ ಯಾವುದೇ ಇತರ ವಿಷಯಗಳಲ್ಲಿ ಮತ್ತು ಅದನ್ನು ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ವಿಶ್ವವಿದ್ಯಾಲಯವು ಇದಕ್ಕಾಗಿ ಅಧಿಕೃತಗೊಳಿಸಿದ್ದ ಯಾವೊಬ್ಬ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ಇತರ ಸಂಸ್ಥೆಯು ಕೂಡಲೇ ಕ್ರಮಕೈಗೊಳ್ಳುವುದು ಸಾಧ್ಯವಿರದಿರುವಾಗ ಕುಲಪತಿಯವರು ತಾನು ಸೂಕ್ತವೆಂದು ಭಾವಿಸಬಹುದಾದಂಥ ಕ್ರಮವನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆದು ಕೈಗೊಳ್ಳತಕ್ಕದ್ದು.

(5) ಕುಲಪತಿಯವರು ಪರಿನಿಯಮಗಳು ಅಥವಾ ನಿಯಮಗಳಲ್ಲಿ ಹೇಳಲಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು:

ಪರಂತು, ಕುಲಪತಿಗಳ ಅಭಿಪ್ರಾಯದಲ್ಲಿ, ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಯಾವುದೇ ನಿರ್ಣಯವು, ಈ ಅಧಿನಿಯಮ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳು, ವಿನಿಯಮಗಳು ಅಥವಾ ನಿಯಮಗಳ ಮೂಲಕ ಪ್ರದತ್ತವಾದ ಅಧಿಕಾರದ ಹೊರಗಿದ್ದರೆ ಅಥವಾ ವಿಶ್ವವಿದ್ಯಾಲಯದ ಹಿತಾಸಕ್ತಿಗೆ ಪ್ರತಿಕೂಲವಾಗಬಹುದಾಗಿದ್ದರೆ, ಅದರ ನಿರ್ಣಯದ ದಿನಾಂಕದಿಂದ ಹದಿನೈದು ದಿನಗಳ ಒಳಗೆ ತನ್ನ ನಿರ್ಣಯವನ್ನು ಪರಿಷ್ಕರಿಸಲು ಸಂಬಂಧಪಟ್ಟ ಪ್ರಾಧಿಕಾರವನ್ನು ಆತನು ಕೋರತಕ್ಕದ್ದು ಮತ್ತು ಪ್ರಾಧಿಕಾರವು ಅಂಥ ನಿರ್ಣಯವನ್ನು ಸಂಪೂರ್ಣವಾಗಿ ಅಥವಾ ಭಾಗಶ:ವಾಗಿ ಪರಿಷ್ಕರಿಸಲು ನಿರಾಕರಿಸಿದ ಸಂದರ್ಭದಲ್ಲಿ ಅಥವಾ ಹದಿನೈದು ದಿನಗಳೊಳಗೆ ಯಾವುದೇ ನಿರ್ಣಯವನ್ನು ತೆಗೆದುಕೊಳ್ಳಲು ವಿಫಲವಾದಲ್ಲಿ, ನಂತರ ಅಂಥ ವಿಷಯವನ್ನು ಕುಲಾಧಿಪತಿಗಳಿಗೆ ಕಳುಹಿಸತಕ್ಕದ್ದು ಮತ್ತು ಈ ಬಗ್ಗೆ ಇವರ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

(6) ಕುಲಪತಿಯವರ ಸೇವೆಗಳನ್ನು, ಪ್ರಬಂಧಕ ಮಂಡಳಿಯ ಅನುಮೋದನೆಯೊಂದಿಗೆ ಮತ್ತು ಸಹಜ ನ್ಯಾಯದ ತತ್ವಗಳನ್ನು ಅನುಸರಿಸಿದ ನಂತರ ಹಾಗೂ ಶಿಸ್ತಿನ ಆಧಾರದ ಮೇಲೆ ಅಂತ್ಯಗೊಳಿಸುವ ಸಂದರ್ಭವೂ ಸೇರಿದಂತೆ, ಪ್ರಕರಣದ

ಬಗ್ಗೆ ಕುಲಪತಿಯು ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡಿದ ತರುವಾಯ, ಕುಲಾಧಿಪತಿಯವರು ಅಂತ್ಯಗೊಳಿಸಬಹುದು.

(7) ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಸಂದರ್ಶಕರು, ಸಹ-ಸಂದರ್ಶಕರು, ಕುಲಾಧಿಪತಿಯವರು ಮತ್ತು ಸಹ-ಕುಲಾಧಿಪತಿಯವರು ಇವರುಗಳ ಗೈರು ಹಾಜರಿಯ ಸಂದರ್ಭದಲ್ಲಿ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

18. **ಸಹಕುಲಪತಿಗಳು.**– ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಮೂರು ಜನರನ್ನು ಮೀರದಂತೆ ಸಹಕುಲಪತಿಗಳನ್ನು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

19 **ವ್ಯಾಸಂಗ ವಿಭಾಗಗಳ ಡೀನ್‌ಗಳು.**– ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಪರಿನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವ್ಯಾಸಂಗ ವಿಭಾಗಗಳ ಡೀನ್‌ಗಳನ್ನು ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

20. **ಕುಲಸಚಿವರು.**– (1) ಕುಲಾಧಿಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಸಚಿವರನ್ನು ನೇಮಕ ಮಾಡತಕ್ಕದ್ದು.

(2) ಪರಿನಿಯಮಗಳಲ್ಲಿ ಪರಿಭಾಷಿಸಿರುವಂಥ ಎಲ್ಲಾ ಕರಾರುಗಳನ್ನು ವಿಶ್ವವಿದ್ಯಾಲಯದ ಪರವಾಗಿ ಕುಲಸಚಿವರು ಮಾಡಿಕೊಳ್ಳತಕ್ಕದ್ದು ಮತ್ತು ಅದಕ್ಕೆ ಸಹಿ ಹಾಕತಕ್ಕದ್ದು.

(3) ಕುಲಸಚಿವರು ವಿಶ್ವವಿದ್ಯಾಲಯದ ಪರವಾಗಿ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಪರಿನಿಯಮಗಳಿಂದ ಪ್ರದತ್ತಗೊಳಿಸಬಹುದಾದಂಥ ಅಥವಾ ಕುಲಾಧಿಪತಿಯವರು, ಅಥವಾ ಕುಲಪತಿಯವರು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು ವಿಶ್ವವಿದ್ಯಾಲಯದ ದಾಖಲೆಗಳು ಮತ್ತು ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು, ಕುಲಪತಿಯವರು ಅಥವಾ ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಅಂಥ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿತಕ್ಕದ್ದು.

21. **ಹಣಕಾಸು ಅಧಿಕಾರಿ.**– ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಹಣಕಾಸು ಅಧಿಕಾರಿಯನ್ನು ನೇಮಕ ಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

22. **ಇತರ ಅಧಿಕಾರಿಗಳು.**– ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ ನೇಮಕಾತಿಯ ವಿಧಾನ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಕರ್ತವ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ - IV

## ವಿಶ್ವವಿದ್ಯಾಲಯದ ಪ್ರಾಧಿಕಾರಗಳು

23 **ವಿಶ್ವವಿದ್ಯಾಲಯದ ಪ್ರಾಧಿಕಾರಗಳು**– ಈ ಮುಂದಿನವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:–

(i) ಪ್ರಬಂಧಕ ಮಂಡಳಿ;

(ii) ವ್ಯವಸ್ಥಾಪನಾ ಮಂಡಳಿ.

(iii) ಶೈಕ್ಷಣಿಕ ಪರಿಷತ್ತು,

(iv) [illegible]

(v) ಹಣಕಾಸು ಸಮಿತಿ; ಮತ್ತು

(vi) ವಿಶ್ವವಿದ್ಯಾಲಯದ ಪ್ರಾಧಿಕಾರಗಳೆಂದು ಪರಿನಿಯಮಗಳ ಮೂಲಕ ಘೋಷಿಸಬಹುದಾದ ಅಂಥ ಇತರ ಪ್ರಾಧಿಕಾರಗಳು.

**24. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು.**-(1) ಪ್ರಬಂಧಕ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಾಧಿಪತಿಯವರು - ಅಧ್ಯಕ್ಷರು;

(ii) ಸಹ-ಕುಲಾಧಿಪತಿಯವರು - ಸದಸ್ಯರು;

(iii) ಕುಲಪತಿಯವರು - ಸದಸ್ಯರು;

(iv) ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಅಥವಾ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(v) ರಾಜ್ಯ ಸರ್ಕಾರವು ನಾಮ ನಿರ್ದೇಶನ ಮಾಡಿದ ಆಡಳಿತವನ್ನು ಒಳಗೊಂಡಂತೆ ವ್ಯವಸ್ಥಾಪನೆ, ಹಣಕಾಸು ಅಥವಾ ಯಾವುದೇ ಇತರ ವಿಶೇಷ ಕ್ಷೇತ್ರದಲ್ಲಿನ ಒಬ್ಬರು ತಜ್ಞರು;

(vi) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಮೂವರು ವ್ಯಕ್ತಿಗಳು ಅವರ ಪೈಕಿ ಒಬ್ಬರು ಮಹಿಳೆಯಾಗಿರತಕ್ಕದ್ದು;

(vii) ಸಹ ಕುಲಪತಿಯವರು ಮತದಾನದ ಹಕ್ಕಿಲ್ಲದ ಸದಸ್ಯರಾಗಿರತಕ್ಕದ್ದು;

(viii) ವಿಶ್ವವಿದ್ಯಾಲಯ ಅನುದಾನ ಆಯೋಗದ ನಾಮನಿರ್ದೇಶಿತ ಒಬ್ಬ ಸುಪ್ರಸಿದ್ಧ ಶಿಕ್ಷಣ ತಜ್ಞರು.

(2) ಕುಲಸಚಿವರು ಪ್ರಬಂಧಕ ಮಂಡಳಿಯ ಮತದಾನದ ಹಕ್ಕಿರದ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ಪ್ರಬಂಧಕ ಮಂಡಳಿಯ ಸದಸ್ಯರ ಪದಾವಧಿ, ಸರ್ಕಾರದಿಂದ ನಾಮನಿರ್ದೇಶಿತರಾದ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ನೇಮಕಾತಿ, ನವೀಕರಣ ಮತ್ತು ತೆಗೆದುಹಾಕುವುದು ಮುಂತಾದವುಗಳು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಾಧಿಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರ ಗೈರುಹಾಜರಿಯಲ್ಲಿ ಕುಲಾಧಿಪತಿಯವರಿಂದ ನಾಮನಿರ್ದೇಶಿತರಾದ ಯಾರಾದರೂ ಒಬ್ಬರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು. ಅಂಥ ಸಭೆಯ ಅಧ್ಯಕ್ಷತೆಯನ್ನು ವಹಿಸುವುದಕ್ಕೆ ಕುಲಾಧಿಪತಿಯವರು ಯಾವೊಬ್ಬ ವ್ಯಕ್ತಿಯನ್ನೂ ನಾಮನಿರ್ದೇಶನ ಮಾಡಿರದಿದ್ದಲ್ಲಿ, ಸಭೆಯಲ್ಲಿ ಹಾಜರಿರುವ ಸದಸ್ಯರು ಸರಳ ಬಹುಮತದ ಮೂಲಕ ಅವರುಗಳ ಪೈಕಿಯಿಂದಲೇ ಆ ಸಭೆಗೆ ಮಾತ್ರವೇ ಅಧ್ಯಕ್ಷನನ್ನು ಚುನಾಯಿಸತಕ್ಕದ್ದು.

(5) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಿಗೆ, ಅಂಥ ಸಭೆಯಲ್ಲಿ ಹಾಜರಾಗುವ ಮತ್ತು ಮತದಾನ ನೀಡುವ ಮೂರು ಜನ ಸದಸ್ಯರು ಕೋರಂ ಆಗಿರತಕ್ಕದ್ದು:

ಪರಂತು, ಪ್ರಬಂಧಕ ಮಂಡಳಿಯ ಯಾವುದೇ ಸಭೆಯ ಕೋರಂ ಪೂರ್ಣವಾಗಬೇಕಾದರೆ ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಿರುವುದು ಮತ್ತು ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ನಾಮನಿರ್ದೇಶಿತರು ಹಾಜರಾಗದೇ ಇದ್ದಾಗ ಕುಲಪತಿಯವರು ಹಾಜರಿರುವುದು ಯಾವಾಗಲೂ ಅವಶ್ಯವಾಗಿರತಕ್ಕದ್ದು.

(6) ಪ್ರಬಂಧಕ ಮಂಡಳಿಯು ವಿಶ್ವವಿದ್ಯಾಲಯದ ಪ್ರಧಾನ ಪ್ರಬಂಧಕ ಸಂಸ್ಥೆಯಾಗಿರತಕ್ಕದ್ದು ಮತ್ತು ಅದು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಕಗೊಳಿಸುವುದು;

(ii) ವಿಶ್ವವಿದ್ಯಾಲಯವು ಅನುಸರಿಸಬೇಕಾದ ಕಾರ್ಯನೀತಿಗಳನ್ನು ರಚಿಸುವುದು;

(iii) ಈ ಅಧಿನಿಯಮದ ಅಥವಾ ಪರಿನಿಯಮಗಳ ಅಥವಾ ನಿಯಮಗಳ ಉಪಬಂಧಗಳಿಗೆ ಅನುಗುಣವಾಗಿ ಇರದ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ತೀರ್ಮಾನಗಳನ್ನು ಪುನರೀಕ್ಷಿಸುವುದು;

(iv) ವಿಶ್ವವಿದ್ಯಾಲಯದ ಆಯವ್ಯಯ ಮತ್ತು ವಾರ್ಷಿಕ ವರದಿಗಳನ್ನು ಅನುಮೋದಿಸುವುದು;

(v) ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸುವುದು ಅಥವಾ ಈಗಾಗಲೇ ಇರುವ ಪರಿನಿಯಮಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವುದು ಅಥವಾ ನಿರಸನಗೊಳಿಸುವುದು;

(vi) ವಿಶ್ವವಿದ್ಯಾಲಯವನ್ನು ಸ್ವಯಂಸಮಾಪನಗೊಳಿಸುವ ನಿರ್ಧಾರವನ್ನು ತೆಗೆದುಕೊಳ್ಳುವುದು;

(vii) ಸರ್ಕಾರಕ್ಕೆ ಸಲ್ಲಿಸುವ ಪ್ರಸ್ತಾವಗಳನ್ನು ಅನುಮೋದಿಸುವುದು;

(viii) ಶುಲ್ಕ ನಿಯಂತ್ರಣ ಸಮಿತಿಗೆ ಮೂವರು ಸದಸ್ಯರನ್ನು ನಾಮನಿರ್ದೇಶನ ಮಾಡುವುದು; ಮತ್ತು

(ix) ವಿಶ್ವವಿದ್ಯಾಲಯದ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕೆ ಅಪೇಕ್ಷಣೀಯವೆಂದು ಕಂಡುಬರುವಂಥ ತೀರ್ಮಾನಗಳನ್ನು ಮತ್ತು ಕ್ರಮಗಳನ್ನು ಕೈಗೊಳ್ಳುವುದು.

(7) ಪ್ರಬಂಧಕ ಮಂಡಳಿಯು ಒಂದು ವರ್ಷದಲ್ಲಿ ಕನಿಷ್ಠ ಮೂರು ಸಲ ಸಭೆ ಸೇರತಕ್ಕದ್ದು.

(8) ಪ್ರಬಂಧಕ ಮಂಡಳಿಯು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಸಮಯ ಮತ್ತು ಸ್ಥಳದಲ್ಲಿ ಸಭೆ ಸೇರತಕ್ಕದ್ದು.

25 **ವ್ಯವಸ್ಥಾಪನಾ ಮಂಡಲಿ** - (1) ವ್ಯವಸ್ಥಾಪನಾ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಗಳು;

(ii) ಸಹಕುಲಪತಿಗಳು;

(iii) ಕುಲಸಚಿವರು;

(iv) ಪ್ರಾಯೋಜಕ ಸಂಸ್ಥೆಯ ಇಬ್ಬರು ನಾಮನಿರ್ದೇಶಿತರು;

(v) ಕುಲಪತಿಗಳು ನಾಮನಿರ್ದೇಶಿಸಬಹುದಾದ ಇಬ್ಬರು ಡೀನ್‌ಗಳು;

(2) ಕುಲಪತಿಯವರು ವ್ಯವಸ್ಥಾಪನಾ ಮಂಡಳಿಯ ಅಧ್ಯಕ್ಷರಾಗಿರತಕ್ಕದ್ದು ಮತ್ತು ಕುಲಸಚಿವರು ವ್ಯವಸ್ಥಾಪನಾ ಮಂಡಳಿಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ವ್ಯವಸ್ಥಾಪನಾ ಮಂಡಳಿಯು ವಿಶ್ವವಿದ್ಯಾಲಯದ ಕಾರ್ಯಕಾರಿ ಸಂಸ್ಥೆಯಾಗಿರತಕ್ಕದ್ದು. ವ್ಯವಸ್ಥಾಪನಾ ಮಂಡಳಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ವ್ಯವಸ್ಥಾಪನಾ ಮಂಡಳಿಯ ಎಲ್ಲಾ ಸಭೆಗಳಲ್ಲಿ ಯಾವಾಗಲೂ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು ಹಾಗೂ ಕುಲಪತಿಯವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೇ ಇದ್ದ ಸಂದರ್ಭದಲ್ಲಿ ಸಭೆಯಲ್ಲಿ ಹಾಜರಿರುವ ಸದಸ್ಯರು ಚುನಾಯಿಸಿದ ಯಾವುದೇ ಇತರ ಸದಸ್ಯರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ವ್ಯವಸ್ಥಾಪನಾ ಮಂಡಳಿಯ ಸಭೆಯಲ್ಲಿ ಯಾವುದೇ ವಿಷಯವನ್ನು ಕುರಿತು ವಿವಾದ ಉಂಟಾದಲ್ಲಿ ಸದರಿ ವಿಷಯವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯದ ಬಗ್ಗೆ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

26 **ಶೈಕ್ಷಣಿಕ ಪರಿಷತ್ತು**.-(1) ಶೈಕ್ಷಣಿಕ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಯವರು - ಅಧ್ಯಕ್ಷರು

(ii) ಸಹಕುಲಪತಿಯವರು - ಸದಸ್ಯರು

(iii) ಕುಲಸಚಿವರು - ಕಾರ್ಯದರ್ಶಿಗಳು

(iv) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಶೈಕ್ಷಣಿಕ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಶೈಕ್ಷಣಿಕ ಸಂಸ್ಥೆಯಾಗಿರತಕ್ಕದ್ದು ಮತ್ತು ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಹಾಗೂ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಬಗ್ಗೆ ಸಾಮಾನ್ಯ (general) ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

27 **ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು**.- (1) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಸಂಶೋಧನಾ ಮತ್ತು ಅನ್ವೇಷಣಾ ಘಟಕವಾಗಿರತಕ್ಕದ್ದು, ಹಾಗೂ ಸಂಶೋಧನಾ ಕ್ಷೇತ್ರ

ದ್ಯತೆಯೂ ಒಳಗೊಂಡಂತೆ, ವಿಶ್ವವಿದ್ಯಾಲಯವು ಕೈಗೊಳ್ಳಬೇಕಾದ ಸಂಶೋಧನೆಯ ಬಗ್ಗೆ ಒಂದು ವ್ಯಾಪಕವಾದ ಪರಿಪೂರ್ಣ ಭವಿಷ್ಯದ್ ದೃಷ್ಟಿಯನ್ನು ಒದಗಿಸತಕ್ಕದ್ದು. ಈ ಪರಿಷತ್ತು, ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಮತ್ತು ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಸಂಶೋಧನೆ ಮತ್ತು ಅನ್ವೇಷಣಾ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಪ್ರಧಾನ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಯವರು – ಅಧ್ಯಕ್ಷರು
(ii) ಸಹಕುಲಪತಿಯವರು – ಸದಸ್ಯರು
(iii) ಸಂಶೋಧನೆಯ ಡೀನ್ – ಕಾರ್ಯದರ್ಶಿ
(iv) ಅನ್ವೇಷಣಾ ವಿಭಾಗದ ಮುಖ್ಯಸ್ಥರು – ಸದಸ್ಯರು
(V) ಎಲ್ಲಾ ವ್ಯಾಸಂಗ ವಿಭಾಗಗಳ ಡೀನ್‌ಗಳು – ಸದಸ್ಯರು
(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

**28. ಹಣಕಾಸು ಸಮಿತಿ.–** (1) ಹಣಕಾಸು ಸಮಿತಿ ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಾಧಿಪತಿಯವರು ಅಥವಾ ಅವರ ನಾಮನಿರ್ದೇಶಿತರು – ಅಧ್ಯಕ್ಷರು
(ii) ಸಹ-ಕುಲಾಧಿಪತಿಯವರು – ಸದಸ್ಯರು
(iii) ಕುಲಪತಿಯವರು – ಸದಸ್ಯರು
(iv) ಕುಲಸಚಿವರು – ಸದಸ್ಯರು
(v) ಹಣಕಾಸು ಅಧಿಕಾರಿ – ಕಾರ್ಯದರ್ಶಿ
(vi) ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು – ಸದಸ್ಯರು ಮತ್ತು
(vii) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಹಣಕಾಸು ಸಮಿತಿಯು ಹಣಕಾಸಿನ ವಿಷಯಗಳನ್ನು ನೋಡಿಕೊಳ್ಳುವ ವಿಶ್ವವಿದ್ಯಾಲಯದ ಪ್ರಧಾನ ಹಣಕಾಸು ಸಂಸ್ಥೆಯಾಗಿರತಕ್ಕದ್ದು ಹಾಗೂ ಅದು ಈ ಅಧಿನಿಯಮ, ನಿಯಮಗಳು ಮತ್ತು ಪರಿನಿಯಮಗಳ ಉಪಬಂಧಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಹಣಕಾಸು ವಿಷಯಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**29. ಇತರ ಪ್ರಾಧಿಕಾರಗಳು.–** ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ರಚನೆ, ಅಧಿಕಾರಗಳು ಹಾಗೂ ಪ್ರಕಾರ್ಯಗಳು ಪರಿನಿಯಮಗಳಿಂದ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

**30. ಒಂದು ಪ್ರಾಧಿಕಾರದ ಅಥವಾ ಸಂಸ್ಥೆಯ ಸದಸ್ಯತ್ವಕ್ಕೆ ಅನರ್ಹತೆ.–** ವಿಶ್ವವಿದ್ಯಾಲಯದ ಸಂಸ್ಥೆಗಳ ಯಾವುವೇ ಪ್ರಾಧಿಕಾರಗಳ ಒಬ್ಬ ವ್ಯಕ್ತಿಯು,–

(ಎ) ಅಸ್ವಸ್ಥ ಚಿತ್ತನಾಗಿದ್ದು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿಸಲ್ಪಟ್ಟಿದ್ದರೆ;

(ಬಿ) ಅವಿಮುಕ್ತ ದಿವಾಳಿಯಾಗಿದ್ದರೆ;

(ಸಿ) ನೈತಿಕ ಅಧಃಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದರೆ;

(ಡಿ) ಖಾಸಗಿ ಬೋಧನಾ ತರಗತಿಗಳನ್ನು ನಡೆಸುತ್ತಿದ್ದರೆ ಅಥವಾ ಸ್ವತಃ ನಿರತನಾಗಿದ್ದರೆ;

(ಇ) ಯಾವುದೇ ವಿಧದಲ್ಲಿ, ಎಲ್ಲಿಯೇ, ಯಾವುದೇ ಪರೀಕ್ಷೆಯನ್ನು ನಡೆಸುವಲ್ಲಿ ಅನುಚಿತ ಅಭ್ಯಾಸದಲ್ಲಿ ತೊಡಗಿದ್ದಕ್ಕಾಗಿ ಅಥವಾ ಉತ್ತೇಜಿಸಿದ್ದಕ್ಕಾಗಿ ದಂಡಿತನಾಗಿದ್ದರೆ; ಮತ್ತು

(ಎಫ್) ಪ್ರಾಯೋಜಕ ಸಂಸ್ಥೆಯು ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಯಾವೊಬ್ಬ ಸದಸ್ಯನನ್ನು ಆ ಪದವನ್ನು ಹೊಂದಿರುವುದಕ್ಕೆ ಅರ್ಹನಲ್ಲನೆಂದು ಲಿಖಿತದಲ್ಲಿ ಅಭಿಪ್ರಾಯ ನೀಡಿದಾಗಲೆಲ್ಲಾ,

–ಸದಸ್ಯನಾಗಿರುವುದಕ್ಕೆ ಅನರ್ಹನಾಗತಕ್ಕದ್ದು.

**31. ಖಾಲಿಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ.-** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಕಾರ್ಯ ಅಥವಾ ವ್ಯವಹರಣೆಗಳು ಕೇವಲ ಅದರಲ್ಲಿ ಯಾವುದೇ ಖಾಲಿಸ್ಥಾನ ಇದೆ ಎಂಬ ಕಾರಣದಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣದಿಂದ ಮಾತ್ರವೇ ಅಸಿಂಧುವಾಗತಕ್ಕದ್ದಲ್ಲ.

**32. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು.-** (1) ಯಾವುವೇ ಕಾರ್ಯಸೂಚಿ ವಿಷಯಗಳನ್ನು ಕುಲಾಧಿಪತಿಯವರ ಪೂರ್ವಾನುಮೋದನೆಯನ್ನು ಪಡೆಯದೇ ಪ್ರಬಂಧಕ ಮಂಡಳಿಯ ಅಥವಾ ವ್ಯವಸ್ಥಾಪನಾ ಮಂಡಳಿಯ ಅಥವಾ ಯಾವುದೇ ಸಮಿತಿಯ ಸಭೆಗಳ ಕಾರ್ಯಸೂಚಿ ವಿಷಯಗಳಲ್ಲಿ ಸೇರಿಸತಕ್ಕದ್ದಲ್ಲ ಅಥವಾ ಚರ್ಚೆಗೆ ತೆಗೆದುಕೊಳ್ಳತಕ್ಕದ್ದಲ್ಲ ಮತ್ತು ತೀರ್ಮಾನಿಸತಕ್ಕದ್ದಲ್ಲ.

(2) ಈ ಅಧಿನಿಯಮದ ಯಾವುದೇ ಉಪಬಂಧಗಳನ್ನು ಪಾಲಿಸದೆ ಇರುವ ಸಂದರ್ಭದಲ್ಲಿ, ಕುಲಾಧಿಪತಿಯವರು ವಿಶ್ವವಿದ್ಯಾಲಯದ ಯಾವುದೇ ಪದಾಧಿಕಾರಿ ಅಥವಾ ಸಂಸ್ಥೆಯು ತೆಗೆದುಕೊಂಡ ಎಲ್ಲಾ ತೀರ್ಮಾನಗಳನ್ನು ವಿಪರ್ಯಯಗೊಳಿಸುವ ಮೂಲಕ ಪರಿಹಾರ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಅಧಿಕಾರವನ್ನು ಎಲ್ಲಾ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಅಂಥ ಪರಿಹಾರ ಕ್ರಮದ ಪರಿಣಾಮವಾಗಿ ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ವಿಶ್ವವಿದ್ಯಾಲಯದ ಪದಾಧಿಕಾರಿ ಅಥವಾ ಸಂಸ್ಥೆಯು ಕೈಗೊಂಡಿದ್ದ ಎಲ್ಲಾ ಅಂಥ ಕ್ರಮಗಳು, ಮೊದಲಿನಿಂದಲೂ ಶೂನ್ಯ ಮತ್ತು ಅಕೃತ ಎಂದು ಭಾವಿಸತಕ್ಕದ್ದು ಹಾಗೂ ತತ್ಪರಿಣಾಮವಾಗಿ, ಉಪಬಂಧ ಪಾಲಿಸದೇ ಇದ್ದ ವಿಷಯ ಅಥವಾ ನಿರ್ಧಾರದ ಸಂಬಂಧದಲ್ಲಿ ಅದಕ್ಕೆ ಮುಂಚೆ ಇದ್ದ ವಸ್ತುಸ್ಥಿತಿಯೇ ಮುಂದುವರಿಯತಕ್ಕದ್ದು.

## ಅಧ್ಯಾಯ - V

### ಪರಿನಿಯಮಗಳು ಮತ್ತು ವಿನಿಯಮಗಳು

**33. ಪರಿನಿಯಮಗಳು.-** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಪರಿನಿಯಮಗಳು ವಿಶ್ವವಿದ್ಯಾಲಯಕ್ಕೆ ಮತ್ತು ಸಿಬ್ಬಂದಿಗೆ ಸಂಬಂಧಿಸಿದ ಎಲ್ಲಾ ಅಥವಾ ಯಾವುದೇ ವಿಷಯಕ್ಕೆ ಈ ಕೆಳಗಿನಂತೆ ಉಪಬಂಧ ಕಲ್ಪಿಸಬಹುದು, ಎಂದರೆ:-

(i) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಕಾರ್ಯಕಲಾಪಗಳನ್ನು ನಡೆಸುವ ಮತ್ತು ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸದಿರುವ ಸಂಸ್ಥೆಗಳ ರಚನೆಯ ಕಾರ್ಯವಿಧಾನ;

(ii) 52ನೇ ಪ್ರಕರಣಕ್ಕೆ ಒಳಪಟ್ಟು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ವಿಶ್ವವಿದ್ಯಾಲಯ ದತ್ತಿ ನಿಧಿ, ಸಾಮಾನ್ಯ ನಿಧಿ ಹಾಗೂ ಅಭಿವೃದ್ಧಿ ನಿಧಿಗಳ ನಿರ್ವಹಣೆ;

(iii) ಕುಲಪತಿಗಳು, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರ ನೇಮಕಾತಿಯ ನಿಬಂಧನೆಗಳು ಹಾಗೂ ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಪ್ರಕಾರ್ಯಗಳು;

(iv) ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ, ಅಧ್ಯಾಪಕರ ಮತ್ತು ನೌಕರರ ನೇಮಕಾತಿ ವಿಧಾನ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(v) ವಿಶ್ವವಿದ್ಯಾಲಯ ಹಾಗೂ ಅದರ ಅಧಿಕಾರಿಗಳು, ವ್ಯಾಸಂಗ ವಿಭಾಗದ (ಫ್ಯಾಕಲ್ಟಿ) ಸದಸ್ಯರು, ನೌಕರರು ಹಾಗೂ ವಿದ್ಯಾರ್ಥಿಗಳ ನಡುವೆ ಉಂಟಾದ ವಿವಾದಗಳನ್ನು ಪರಿಹರಿಸುವ ಕಾರ್ಯವಿಧಾನ;

(vi) ವಿಭಾಗಗಳು ಮತ್ತು ವ್ಯಾಸಂಗ ವಿಭಾಗಗಳ (ಫ್ಯಾಕಲ್ಟಿಗಳ) ಸೃಜನೆ, ರದ್ದತಿ ಅಥವಾ ಪುನಾರಚನೆ;

(vii) ಇತರ ವಿಶ್ವವಿದ್ಯಾಲಯಗಳು ಅಥವಾ ಉನ್ನತ ಕಲಿಕಾ ಸಂಸ್ಥೆಗಳ ಜೊತೆಯಲ್ಲಿ ಸಹಕರಿಸಬೇಕಾದ ರೀತಿ;

(viii) ಗೌರವ ಪದವಿಗಳ ನೀಡಿಕೆಯ ಕಾರ್ಯವಿಧಾನ;

(ix) ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿವೇತನ ಮಂಜೂರಾತಿಗೆ ಸಂಬಂಧಿಸಿದ ಉಪಬಂಧಗಳು;

(x) ವಿವಿಧ ವ್ಯಾಸಂಗ ಕ್ರಮಗಳಲ್ಲಿನ ಸೀಟುಗಳ ಸಂಖ್ಯೆಗೆ ಸಂಬಂಧಿಸಿದ ಕಾರ್ಯನೀತಿಗಳು ಮತ್ತು ಅಂಥ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಕಾರ್ಯವಿಧಾನ;

(xi) ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಶುಲ್ಕಕ್ಕೆ ಸಂಬಂಧಿಸಿದ ಕಾರ್ಯನೀತಿ

(xii) ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿವೇತನಗಳು ಶಿಷ್ಯವೇತನಗಳು [illegible]
[illegible]

(xiii) ಹುದ್ದೆಗಳ ಸೃಜನೆ ಮತ್ತು ರದ್ಧತಿಗಾಗಿನ ಕಾರ್ಯವಿಧಾನ; ಮತ್ತು

(xiv) ಪ್ರಬಂಧಕ ಮಂಡಳಿಯು ನಿರ್ಧರಿಸಬಹುದಾದ ಅಥವಾ ಈ ಅಧಿನಿಯಮದ ಅಡಿಯಲ್ಲಿ ಪರಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬೇಕಾದ ಅಗತ್ಯತೆಯುಳ್ಳ ಯಾವುದೇ ಇತರ ವಿಷಯಗಳು.

**34. ಪರಿನಿಯಮಗಳ ರಚನೆ ವಿಧಾನ.**- (1) ವ್ಯವಸ್ಥಾಪನಾ ಮಂಡಳಿಯು ರಚಿಸಿದ ಮೊದಲ ಪರಿನಿಯಮಗಳನ್ನು ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ವ್ಯವಸ್ಥಾಪನಾ ಮಂಡಳಿಯು ಸಲ್ಲಿಸಿದ ಮೊದಲ ಪರಿನಿಯಮಗಳನ್ನು ಪ್ರಬಂಧಕ ಮಂಡಳಿಯು ಪರಿಗಣಿಸತಕ್ಕದ್ದು ಹಾಗೂ ತಾನು ಅವಶ್ಯವೆಂದು ಭಾವಿಸಬಹುದಾದ ಅಂಥ ಮಾರ್ಪಾಡುಗಳು, ಯಾವುದಾದರು ಇದ್ದಲ್ಲಿ, ಅವುಗಳೊಡನೆ ತನ್ನ ಅನುಮೋದನೆಯನ್ನು ನೀಡತಕ್ಕದ್ದು.

(3) ವಿಶ್ವವಿದ್ಯಾಲಯವು, ಪ್ರಬಂಧಕ ಮಂಡಳಿಯು ಅನುಮೋದಿಸಿದ ಮೊದಲ ಪರಿನಿಯಮಗಳನ್ನು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ಪ್ರಕಟಿಸತಕ್ಕದ್ದು ಮತ್ತು ತದನಂತರ ಮೊದಲ ಪರಿನಿಯಮಗಳ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**35. ಪರಿನಿಯಮಗಳ ತಿದ್ದುಪಡಿಯ ಅಧಿಕಾರ.**- ಪ್ರಬಂಧಕ ಮಂಡಳಿಯು ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸಬಹುದು ಅಥವಾ ಪರಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ಅವನ್ನು ನಿರಸನಗೊಳಿಸಬಹುದು.

**36. ವಿನಿಯಮಗಳು.**- ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ವಿನಿಯಮಗಳು ಈ ಮುಂದಿನ ವಿಷಯಗಳಿಗೆ ಉಪಬಂಧಗಳನ್ನು ಕಲ್ಪಿಸಬಹುದು, ಎಂದರೆ:-

(i) ವಿಶ್ವವಿದ್ಯಾಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ವಿದ್ಯಾರ್ಥಿ ಪಟ್ಟಿಯಲ್ಲಿ ಅವರುಗಳ ದಾಖಲಾತಿ ಹಾಗೂ ಮುಂದುವರಿಕೆ;

(ii) ವಿಶ್ವವಿದ್ಯಾಲಯದ ಎಲ್ಲಾ ಪದವಿಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ನಿಗದಿಪಡಿಸತಕ್ಕ ವ್ಯಾಸಂಗ ಕ್ರಮಗಳು;

(iii) ಪದವಿಗಳ ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರದಾನ;

(iv) ಸಂಶೋಧನಾ ವೇತನಗಳು (ಫೆಲೋಶಿಪ್), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಪದಕಗಳು ಮತ್ತು ಬಹುಮಾನಗಳನ್ನು ನೀಡಲು ಷರತ್ತುಗಳು;

(v) ಪರೀಕ್ಷೆಗಳನ್ನು ನಡೆಸುವುದು ಹಾಗೂ ಪರೀಕ್ಷೆ ನಡೆಸುವ ಸಂಸ್ಥೆಗಳು, ಪರೀಕ್ಷಕರು, ಪರೀಕ್ಷಾ ಮೇಲ್ವಿಚಾರಕರು, ಟ್ಯಾಬುಲೇಟರ್‌ಗಳು ಮತ್ತು ಮಾಡರೇಟರ್‌ಗಳ ನೇಮಕಾತಿ ವಿಧಾನ ಮತ್ತು ಷರತ್ತುಗಳು ಹಾಗೂ ಅವರ ಕರ್ತವ್ಯಗಳು;

(vi) ವಿಶ್ವವಿದ್ಯಾಲಯದ ಪರೀಕ್ಷೆಗಳಿಗೆ, ಪದವಿಗಳಿಗೆ ಹಾಗೂ ಇತರ ಶೈಕ್ಷಣಿಕ ಪ್ರಶಸ್ತಿಗಳಿಗೆ ಪ್ರವೇಶಕ್ಕೆ ವಿಧಿಸತಕ್ಕ ಶುಲ್ಕ;

(vii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನಲ್ಲಿ ವಿದ್ಯಾರ್ಥಿಗಳ ನಿವಾಸಕ್ಕಾಗಿ ಷರತ್ತುಗಳು;

(viii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಶಿಸ್ತು ಪಾಲನೆ; ಮತ್ತು

(ix) ಈ ಅಧಿನಿಯಮದ ಅಡಿಯಲ್ಲಿನ ಪರಿನಿಯಮಗಳಲ್ಲಿ ಉಪಬಂಧ ಕಲ್ಪಿಸಬಹುದಾಂಥ ಇತರ ಎಲ್ಲಾ ವಿಷಯಗಳು.

**37. ವಿನಿಯಮಗಳ ರಚನೆ ವಿಧಾನ.**- ವಿನಿಯಮಗಳನ್ನು ಶೈಕ್ಷಣಿಕ ಪರಿಷತ್ತು ರಚಿಸತಕ್ಕದ್ದು ಹಾಗೂ ವ್ಯವಸ್ಥಾಪನಾ ಮಂಡಳಿಯು ಅನುಮೋದಿಸತಕ್ಕದ್ದು.

**38. ವಿನಿಯಮಗಳ ತಿದ್ದುಪಡಿಗೆ ಅಧಿಕಾರ.**- ವ್ಯವಸ್ಥಾಪನಾ ಮಂಡಳಿಯ ಅನುಮೋದನೆಯೊಡನೆ ಶೈಕ್ಷಣಿಕ ಪರಿಷತ್ತು ಹೊಸ ವಿನಿಯಮಗಳನ್ನು ಅಥವಾ ಹೆಚ್ಚುವರಿ ವಿನಿಯಮಗಳನ್ನು ರಚಿಸಬಹುದು ಅಥವಾ ವಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ನಿರಸನಗೊಳಿಸಬಹುದು.

**39. ಶುಲ್ಕ ನಿಗಧಿ.**- (1) 9ನೇ ಪ್ರಕರಣದ ಪರಂತುಕದ ಅಡಿಯಲ್ಲಿ ರಾಜ್ಯ ಸರ್ಕಾರದ ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡಲಾದ ಪ್ರವೇಶಗಳಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳಲ್ಲಿನ ಶೇಕಡಾ ನಲವತ್ತರಷ್ಟು ಪ್ರವೇಶಗಳ ಸಂಬಂಧದಲ್ಲಿ ಶುಲ್ಕವು ಸರ್ಕಾರ ಮತ್ತು ವಿಶ್ವವಿದ್ಯಾಲಯವು ಸಮ್ಮತಾಭಿಪ್ರಾಯದ ಒಪ್ಪಂದದ ಪ್ರಕಾರ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) ಅಧಿನಿಯಮ, 2006ರ

(2006ರ ಕರ್ನಾಟಕ ಅಧಿನಿಯಮ 8) ಅನುಸಾರವಾಗಿ ಸರ್ಕಾರಿ ಸೀಟುಗಳಿಗಾಗಿ ರಾಜ್ಯ ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸಿದಂತೆ ಇರತಕ್ಕದ್ದು.

(2) ವಿಶ್ವವಿದ್ಯಾಲಯದ ಇತರ ಸೀಟುಗಳಿಗೆ ಸಂಬಂಧಿಸಿದಂತೆ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳು (ಪ್ರವೇಶ, ನಿಯಂತ್ರಣ ಮತ್ತು ಶುಲ್ಕ ನಿಗದಿ) ಅಧಿನಿಯಮ, 2006ರ (2006ರ ಕರ್ನಾಟಕ ಅಧಿನಿಯಮ 8) 6ನೇ ಪ್ರಕರಣದ ಉಪಬಂಧಗಳ ಅನುಸಾರವಾಗಿ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರ ಅಧ್ಯಕ್ಷತೆಯ ಅಡಿಯಲ್ಲಿ ರಚಿಸಲಾದ ಶುಲ್ಕ ನಿಯಂತ್ರಣ ಸಮಿತಿಯ ಮೂಲಕ ಶುಲ್ಕವನ್ನು ನಿಗದಿಪಡಿಸತಕ್ಕದ್ದು. ಈ ಪ್ರಕರಣದ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವನ್ನು ಖಾಸಗಿ ಅನುದಾನರಹಿತ ವೃತ್ತಿಪರ ಶಿಕ್ಷಣ ಸಂಸ್ಥೆ ಎಂದು ಭಾವಿಸತಕ್ಕದ್ದು.

## ಅಧ್ಯಾಯ - VI

## ಸಂಕೀರ್ಣ

**40 ನೌಕರರ ಸೇವಾ ಷರತ್ತುಗಳು.-** (1) ಪರಿನಿಯಮಗಳ ಮತ್ತು ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಥವಾ ನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳು, ಯಾವುದಾದರೂ ಇದ್ದಲ್ಲಿ, ಅವುಗಳಿಗೆ ಒಳಪಟ್ಟು ಪ್ರತಿಯೊಬ್ಬ ನೌಕರನು ಲಿಖಿತ ಕರಾರಿನ ಅಡಿಯಲ್ಲಿ ನೇಮಕಗೊಳ್ಳತಕ್ಕದ್ದು ಮತ್ತು ಅದನ್ನು ವಿಶ್ವವಿದ್ಯಾಲಯದಲ್ಲಿ ಇಟ್ಟುಕೊಳ್ಳತಕ್ಕದ್ದು ಹಾಗೂ ಅದರ ಪ್ರತಿಯನ್ನು ಸಂಬಂಧಪಟ್ಟ ನೌಕರನಿಗೆ ನೀಡತಕ್ಕದ್ದು.

(2) ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಕಾರ್ಯವಿಧಾನಗಳ ಮೂಲಕ ನಿಯಂತ್ರಿಸತಕ್ಕದ್ದು.

(3) ಕರಾರಿನಿಂದಾಗಿ ವಿಶ್ವವಿದ್ಯಾಲಯ ಮತ್ತು ನೌಕರನ ಮಧ್ಯದಲ್ಲಿ ಉದ್ಭವಿಸಬಹುದಾದ ಯಾವುದೇ ವಿವಾದವನ್ನು, ಲಿಖಿತ ಕರಾರಿನಲ್ಲಿ ಉಪಬಂಧಿಸಿದ ವಿಧಾನದಲ್ಲಿ ಹಾಗೂ ಪರಿನಿಯಮಗಳ ಅನುಸಾರವಾಗಿ ಪರಿಹರಿಸತಕ್ಕದ್ದು.

**41. ಮೇಲ್ಮನವಿ ಹಕ್ಕು.-** ವಿಶ್ವವಿದ್ಯಾಲಯವು ತನ್ನ ನೌಕರರ ಅಥವಾ ವಿದ್ಯಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡ ಸಂದರ್ಭದಲ್ಲಿ, ಬಾಧಿತ ನೌಕರ ಅಥವಾ ವಿದ್ಯಾರ್ಥಿಗಳು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಿದ ಅಂಥ ಪ್ರಾಧಿಕಾರಕ್ಕೆ ಮೇಲ್ಮನವಿ ಸಲ್ಲಿಸುವ ಹಕ್ಕನ್ನು ಹೊಂದಿರತಕ್ಕದ್ದು.

**42. ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿ.-** ವಿಶ್ವವಿದ್ಯಾಲಯವು, ತನ್ನ ನೌಕರರ ಪ್ರಯೋಜನಕ್ಕಾಗಿ, ಪರಿನಿಯಮಗಳು ಮತ್ತು ಜಾರಿಯಲ್ಲಿರುವ ಕಾನೂನುಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿಯನ್ನು ರಚಿಸತಕ್ಕದ್ದು ಹಾಗೂ ಅಂಥ ವಿಮಾ ಯೋಜನೆಗಳನ್ನು ಒದಗಿಸತಕ್ಕದ್ದು.

**43. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು.-** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಇತರ ಸಂಸ್ಥೆಯ ಸದಸ್ಯನಾಗಿ ಯಾವೊಬ್ಬ ವ್ಯಕ್ತಿಯು ಸೂಕ್ತವಾಗಿ ಆಯ್ಕೆಯಾಗಿದ್ದಾನೆಯೇ ಅಥವಾ ನೇಮಕಗೊಂಡಿದ್ದಾನೆಯೇ ಅಥವಾ ಅದಕ್ಕೆ ಅರ್ಹನಾಗಿದ್ದಾನೆಯೇ ಎಂಬ ಯಾವುದೇ ಪ್ರಶ್ನೆ ಉದ್ಭವಿಸಿದರೆ, ಆ ವಿಷಯವನ್ನು ತೀರ್ಮಾನಕ್ಕಾಗಿ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**44. ಸಮಿತಿಗಳ ರಚನೆ –** 22ನೇ ಪ್ರಕರಣದಲ್ಲಿ ನಮೂದಿಸಿದ ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಅಧಿಕಾರವನ್ನು ಹೊಂದಿರುವ ಅಂಥ ಸದಸ್ಯರನ್ನು ಒಳಗೊಂಡ ಅಂಥ ಪ್ರಾಧಿಕಾರದ ಒಂದು ಸಮಿತಿಯನ್ನು ರಚಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**45. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು.-** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಂಸ್ಥೆಯ ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ಪೈಕಿ ಯಾವುದೇ ಸ್ಥಾನವು ಆಕಸ್ಮಿಕವಾಗಿ ಖಾಲಿಯಾದರೆ, ಯಾರ ಸ್ಥಾನವು ಖಾಲಿಯಾಗಿ ತುಂಬಬೇಕಾಗಿ ಬಂದಿದೆಯೋ ಆ ಸದಸ್ಯನನ್ನು ಯಾವ ರೀತಿಯಲ್ಲಿ ಆರಿಸಲಾಗಿತ್ತೋ ಅದೇ ರೀತಿಯಲ್ಲಿ ಹೊಸ ಸದಸ್ಯನನ್ನು ಆರಿಸಿ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ಖಾಲಿ ಸ್ಥಾನವನ್ನು ಭರ್ತಿ ಮಾಡಿದ ವ್ಯಕ್ತಿಯು ಆತನು ಯಾವ ಸದಸ್ಯನ ಸ್ಥಾನದಲ್ಲಿ ಭರ್ತಿಯಾಗಿರುವನೋ ಆ ಸದಸ್ಯನು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯನಾಗಿ ಉಳಿಯುತ್ತಿದ್ದ ಬಾಕಿ ಅವಧಿಯವರೆಗೆ ಮಾತ್ರ ಸದಸ್ಯನಾಗಿರತಕ್ಕದ್ದು.

**46 ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.-** ಈ ಅಧಿನಿಯಮ ಅಥವಾ ಪರಿನಿಯಮಗಳು ಅಥವಾ ನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ

ವಿದ್ಯಾಲಯದ ಯಾವೊಬ್ಬ ಅಧಿಕಾರಿ ಅಥವಾ ಇತರ ನೌಕರರ ವಿರುದ್ಧ ಯಾವುದೇ ದಾವೆ ಅಥವಾ ಇತರ ಕಾನೂನು ವ್ಯವಹರಣೆಗಳನ್ನು ನಡೆಸಲು ಅವಕಾಶ ಇರತಕ್ಕದ್ದಲ್ಲ.

47. **ತಾತ್ಕಾಲಿಕ ಉಪಬಂಧಗಳು.**- ಈ ಅಧಿನಿಯಮ ಮತ್ತು ಪರಿನಿಯಮಗಳ ಯಾವುದೇ ಇತರ ಉಪಬಂಧಗಳಲ್ಲಿ ಏನೇ ಇದ್ದರೂ,-

(i) ಮೊದಲ ಕುಲಪತಿ ಮತ್ತು ಸಹಕುಲಪತಿ, ಯಾರಾದರೂ ಇದ್ದರೆ, ಅವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(ii) ಮೊದಲ ಕುಲಸಚಿವರನ್ನು ಮತ್ತು ಮೊದಲ ಹಣಕಾಸು ಅಧಿಕಾರಿಯವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು; ಮತ್ತು

(iii) ಮೊದಲ ವ್ಯವಸ್ಥಾಪನ ಮಂಡಳಿ, ಮೊದಲ ಹಣಕಾಸು ಸಮಿತಿ, ಮೊದಲ ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಹಾಗೂ ಮೊದಲ ಶೈಕ್ಷಣಿಕ ಪರಿಷತ್ತನ್ನು ಕುಲಾಧಿಪತಿಯವರು ರಚಿಸತಕ್ಕದ್ದು.

48. **ಶಾಶ್ವತ ಶಾಸನಬದ್ಧ ದತ್ತಿ ನಿಧಿ.**- (1) ವಿಶ್ವವಿದ್ಯಾಲಯವು, ಕನಿಷ್ಠ ಇಪ್ಪತ್ತೈದು ಕೋಟಿ ರೂಪಾಯಿಗಳನ್ನುಳ್ಳ ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು ಇದರ ಪೈಕಿ ಕನಿಷ್ಠ ಹದಿನೈದು ಕೋಟಿ ರೂಪಾಯಿಗಳು ನಗದು ರೂಪದಲ್ಲಿ ಮತ್ತು ಇನ್ನುಳಿದದ್ದು ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ಇರತಕ್ಕದ್ದು ಮತ್ತು ಇದನ್ನು ತಾನಾಗಿಯೆ ಹೆಚ್ಚಿಸಬಹುದಾಗಿದ್ದು ಆದರೆ ಕಡಿಮೆ ಮಾಡತಕ್ಕದ್ದಲ್ಲ:

ಪರಂತು, ಬೆಂಗಳೂರು ಅಥವಾ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊರಗಿರುವ ವಿಶ್ವವಿದ್ಯಾಲಯದ ಸಂದರ್ಭದಲ್ಲಿ ಕನಿಷ್ಠ ಹತ್ತು ಕೋಟಿ ರೂಪಾಯಿಗಳು ನಗದು ರೂಪದಲ್ಲಿರತಕ್ಕದ್ದು ಮತ್ತು ಉಳಿದ ಐದು ಕೋಟಿ ರೂಪಾಯಿಗಳು ಬ್ಯಾಂಕ್ ಗ್ಯಾರಂಟಿಯ ರೂಪದಲ್ಲಿರತಕ್ಕದ್ದು.

(2) ವಿಶ್ವವಿದ್ಯಾಲಯವು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಹಣವನ್ನು ಹೂಡಲು ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯವು ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಗೆ ವರ್ಗಾವಣೆ ಮಾಡಬಹುದು. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನೂ ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(4) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಿದ ವರಮಾನದ ಶೇಕಡಾ ಎಪ್ಪತ್ತೈದರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತೈದರಷ್ಟನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಯಲ್ಲಿ ಪುನ: ತೊಡಗಿಸತಕ್ಕದ್ದು.

49. **ವಿಶ್ವವಿದ್ಯಾಲಯದ ದತ್ತಿ ನಿಧಿ.**- (1) ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ನಿಧಿಗಳನ್ನು ಒಳಗೊಂಡ ವಿಶ್ವವಿದ್ಯಾಲಯದ ದತ್ತಿ ನಿಧಿಯನ್ನು ವಿಶ್ವವಿದ್ಯಾಲಯವು ಸ್ಥಾಪಿಸತಕ್ಕದ್ದು. ಇದು ಕಾಲಕಾಲಕ್ಕೆ ಸ್ವೀಕರಿಸಬಹುದಾದ ದೇಣಿಗೆಗಳು ಮತ್ತು ಇತರ ನಿಧಿಗಳನ್ನು ಒಳಗೊಂಡಿರತಕ್ಕದ್ದು.

(2) ವಿಶ್ವವಿದ್ಯಾಲಯವು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ವಿಶ್ವವಿದ್ಯಾಲಯದ ದತ್ತಿನಿಧಿಯನ್ನು ಹೂಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯ ದತ್ತಿ ನಿಧಿಯು, ವಿಶ್ವವಿದ್ಯಾಲಯವು ತನ್ನ ಸಾಮಾಜಿಕ ಧ್ಯೇಯೋದ್ದೇಶಗಳನ್ನು ನೆರವೇರಿಸುವ ಸಂದರ್ಭದಲ್ಲಿ ಮತ್ತು/ಅಥವಾ ಮುಂಗಾಣದ ಸನ್ನಿವೇಶದಲ್ಲಿ ಉದ್ಭವಿಸಬಹುದಾದ ಹಣಕಾಸು ಸವಾಲುಗಳಿಂದ ತನ್ನನ್ನು ರಕ್ಷಿಸಿಕೊಳ್ಳುವುದಕ್ಕಾಗಿ, ಸ್ವಇಚ್ಛೆಯಿಂದ ನಿರ್ವಹಿಸಿಕೊಂಡು ಬರಲು ಮತ್ತು ಜವಾಬ್ದಾರಿಯಿಂದ ಹಣ ಹೂಡಿಕೆ ಮಾಡಲು ಇಚ್ಛೆಯುಳ್ಳವರಾಗಿ ಸ್ವಯಂ ವಿಧಿಸಿಕೊಂಡ ನಿಧಿಯಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಗೆ ವರ್ಗಾಯಿಸಬಹುದು. ವಿಶ್ವವಿದ್ಯಾಲಯದ ಸಮಾಪಣೆಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನು ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(5) ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಬರುವ ವರಮಾನದ ಶೇಕಡಾ ಎಂಭತ್ತರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸದ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತರಷ್ಟನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**50. ಸಾಮಾನ್ಯ ನಿಧಿ.**- (1) ವಿಶ್ವವಿದ್ಯಾಲಯವು, ಒಂದು ಸಾಮಾನ್ಯ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯವು ವಿಧಿಸಬಹುದಾದ ಎಲ್ಲಾ ಶುಲ್ಕಗಳು;

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವುದೇ ಇತರ ಮೂಲದಿಂದ ಸ್ವೀಕರಿಸಲಾದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ದೇಣಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು ಅಥವಾ ವಂತಿಗೆಗಳು;

(2) ಸಾಮಾನ್ಯ ನಿಧಿಗೆ ಜಮಾ ಮಾಡುವ ನಿಧಿಗಳನ್ನು ವಿಶ್ವವಿದ್ಯಾಲಯದ ಎಲ್ಲಾ ಆವರ್ತಕ ವೆಚ್ಚಗಳನ್ನು ಭರಿಸಲು ಉಪಯೋಗಿಸಕೊಳ್ಳತಕ್ಕದ್ದು.

**51. ಅಭಿವೃದ್ಧಿ ನಿಧಿ.**- (1) ವಿಶ್ವವಿದ್ಯಾಲಯವು, ಒಂದು ಅಭಿವೃದ್ಧಿ ನಿಧಿಯನ್ನು ಸಹ ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:-

(i) ವಿದ್ಯಾರ್ಥಿಗಳಿಂದ ವಿಧಿಸಬಹುದಾದ ಅಭಿವೃದ್ಧಿ ಶುಲ್ಕಗಳು;

(ii) ವಿಶ್ವವಿದ್ಯಾಲಯದ ಅಭಿವೃದ್ಧಿಯ ಉದ್ದೇಶಗಳಿಗಾಗಿ ಯಾವುದೇ ಇತರ ಮೂಲಗಳಿಂದ ಸ್ವೀಕರಿಸಿದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ವಂತಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು ಅಥವಾ ವಂತಿಗೆಗಳು; ಮತ್ತು

(v) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಲಾದ ಎಲ್ಲಾ ವರಮಾನಗಳು.

(2) ಅಭಿವೃದ್ಧಿ ನಿಧಿಗೆ ಕಾಲಕಾಲಕ್ಕೆ ಜಮಾ ಮಾಡಿದ ನಿಧಿಯನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಉಪಯೋಗಿಸಕೊಳ್ಳತಕ್ಕದ್ದು.

**52. ನಿಧಿಗಳ ನಿರ್ವಹಣೆ.**- 48, 49, 50 ಮತ್ತು 51ನೇ ಪ್ರಕರಣಗಳಡಿಯಲ್ಲಿ ಸ್ಥಾಪಿಸಲಾದ ನಿಧಿಗಳನ್ನು ಪ್ರಬಂಧಕ ಮಂಡಳಿಯ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ನಿಯಂತ್ರಿಸತಕ್ಕದ್ದು ಹಾಗೂ ನಿರ್ವಹಿಸತಕ್ಕದ್ದು.

**53. ವಾರ್ಷಿಕ ವರದಿ.**- (1) ವಿಶ್ವವಿದ್ಯಾಲಯದ ವಾರ್ಷಿಕ ವರದಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ಸಿದ್ಧಪಡಿಸತಕ್ಕದ್ದು ಮತ್ತು ಅದರ ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಪ್ರಬಂಧಕ ಮಂಡಳಿಯು ವಾರ್ಷಿಕ ವರದಿಯನ್ನು ತನ್ನ ಸಭೆಯಲ್ಲಿ ಪರಿಗಣಿಸತಕ್ಕದ್ದು ಹಾಗೂ ಅದನ್ನು ಮಾರ್ಪಾಡುಗಳೊಡನೆ ಅಥವಾ ಮಾರ್ಪಾಡುಗಳಿಲ್ಲದೆ ಅನುಮೋದಿಸಬಹುದು.

(3) ಪ್ರಬಂಧಕ ಮಂಡಳಿಯು ಸೂಕ್ತವಾಗಿ ಅನುಮೋದಿಸಿದ ವಾರ್ಷಿಕ ವರದಿಯ ಒಂದು ಪ್ರತಿಯನ್ನು ಪ್ರತಿವರ್ಷದ ಮಾರ್ಚ್ ತಿಂಗಳಿನಲ್ಲಿ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ಡಿಸೆಂಬರ್ 31ಕ್ಕೆ ಮೊದಲು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**54. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.**- (1) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕ ಪತ್ರ ಮತ್ತು ಜಮಾ ಖರ್ಚು ಪಟ್ಟಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ಸಿದ್ಧಪಡಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯಕ್ಕೆ ಎಲ್ಲಾ ಮೂಲಗಳಿಂದ ಪ್ರಾಪ್ತವಾಗುವ ಅಥವಾ ಸ್ವೀಕರಿಸಲಾಗುವ ಎಲ್ಲಾ ನಿಧಿಗಳು ಹಾಗೂ ವಿತರಿಸಿದ ಅಥವಾ ಸಂದಾಯ ಮಾಡಿದ ಎಲ್ಲಾ ಮೊಬಲಗುಗಳನ್ನು ವಿಶ್ವವಿದ್ಯಾಲಯವು ನಿರ್ವಹಿಸುವ ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕಪತ್ರಗಳನ್ನು ಪ್ರತಿ ವರ್ಷವೂ ಭಾರತದ ಚಾರ್ಟೆಡ್ ಅಕೌಂಟೆಂಟ್‌ಗಳ ಸಂಸ್ಥೆಯ ಸದಸ್ಯರಾಗಿರುವ ಒಬ್ಬ ಲೆಕ್ಕಪರಿಶೋಧಕರಿಂದ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಲೆಕ್ಕಪರಿಶೋಧನಾ ವರದಿಯೊಡನೆ, ಪ್ರತಿ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ನವೆಂಬರ್ 30ಕ್ಕೆ ಮೊದಲು ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(4) ವಾರ್ಷಿಕ ಲೆಕ್ಕಪತ್ರಗಳು, ಜಮಾಖರ್ಚು ಪಟ್ಟಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಪ್ರಬಂಧಕ ಮಂಡಳಿಯು ತನ್ನ ಸಭೆಯಲ್ಲಿ ಪರ್ಯಾಲೋಚಿಸತಕ್ಕದ್ದು ಮತ್ತು ಪ್ರಬಂಧಕ ಮಂಡಳಿಯು ಅದನ್ನು ತನ್ನ ಅಭಿಪ್ರಾಯಗಳೊಡನೆ ಸಂದರ್ಶಕರಿಗೆ ಹಾಗೂ ಸರ್ಕಾರಕ್ಕೆ ಪ್ರತಿ ವರ್ಷದ ಡಿಸೆಂಬರ್ 31ಕ್ಕೆ ಮೊದಲು ಕಳುಹಿಸತಕ್ಕದ್ದು.

(5) ಲೆಕ್ಕಪರಿಶೋಧಕರ ವರದಿಯಲ್ಲಿ ಯಾವುದೇ ಮುಖ್ಯ ಬದಲಾವಣೆ ಇದ್ದ ಸಂದರ್ಭದಲ್ಲಿ, ಅವುಗಳನ್ನು ಸರಿಪಡಿಸಲು, ರಾಜ್ಯ ಸರ್ಕಾರವು ವಿಶ್ವವಿದ್ಯಾಲಯಕ್ಕೆ ನಿರ್ದೇಶನಗಳನ್ನು ನೀಡಬಹುದು ಮತ್ತು ಅಂಥ ನಿರ್ದೇಶನಗಳು ವಿಶ್ವವಿದ್ಯಾಲಯದ ಮೇಲೆ ಬಂಧನಕಾರಿಯಾಗಿರತಕ್ಕದ್ದು.

**55. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಮಿತಿಯ ಯಾವುದೇ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ ಅಥವಾ ಗೊತ್ತುವಳಿಯು ಅಥವಾ ವಿಶ್ವವಿದ್ಯಾಲಯದ ಸ್ವಾಧೀನದಲ್ಲಿರುವ ಇತರ ದಾಖಲೆಗಳು ಅಥವಾ ವಿಶ್ವವಿದ್ಯಾಲಯವು ಯುಕ್ತವಾಗಿ ನಿರ್ವಹಿಸುವ ಯಾವುದೇ ರಿಜಿಸ್ಟರ್‌ನಲ್ಲಿಯ ಯಾವುದೇ ನಮೂದುಗಳ ಪ್ರತಿಯನ್ನು, ಅದರ ಮೇಲೆ ಕುಲಸಚಿವರು ಪ್ರಮಾಣೀಕರಿಸಿದ್ದರೆ, ಅದನ್ನು ಅಂಥ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ, ಗೊತ್ತುವಳಿ ಅಥವಾ ದಾಖಲೆ ಅಥವಾ ರಿಜಿಸ್ಟರ್‌ನಲ್ಲಿ ಇರುವ ನಮೂದನ್ನು ಮೇಲ್ನೋಟದ ಸಾಕ್ಷ್ಯವೆಂಬುದಾಗಿ ಸ್ವೀಕರಿಸತಕ್ಕದ್ದು ಮತ್ತು ವಿಷಯಗಳ ಸಾಕ್ಷಿಯಾಗಿ ಅಂಗೀಕರಿಸತಕ್ಕದ್ದು ಹಾಗೂ ಮೂಲ ದಾಖಲೆಗಳನ್ನೇ ಸಲ್ಲಿಸಿದ್ದರೆ ಅದನ್ನು, ದಾಖಲಿಸಿರುವ ವಿಷಯಗಳು ಮತ್ತು ವಹಿವಾಟುಗಳ ಸಾಕ್ಷ್ಯವಾಗಿ ಅಂಗೀಕರಿಸಲಾಗುತ್ತಿತ್ತೋ, ಅದೇ ರೀತಿಯಲ್ಲಿ ಇವನ್ನೂ ಸಾಕ್ಷ್ಯವಾಗಿ ಅಂಗೀಕರಿಸತಕ್ಕದ್ದು.

**56. ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ.–** ರಾಜ್ಯಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಥವಾ ಅದರಲ್ಲಿ ಇರುವ ಯಾವುವೇ ಉಪಬಂಧಗಳನ್ನು ಅಥವಾ ಅದರಡಿಯಲ್ಲಿ ರಚಿಸಿದ ಯಾವುವೇ ನಿಯಮಗಳು ಅಥವಾ ಆದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿರ್ದೇಶನ ನೀಡುವುದು ಅವಶ್ಯವೆಂದು ಅಥವಾ ಉಚಿತವೆಂದು ಅಭಿಪ್ರಾಯಪಟ್ಟಲ್ಲಿ ಅದು ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ ಅಥವಾ ಸಂದರ್ಭಾನುಸಾರವಾಗಿ ವ್ಯವಸ್ಥಾಪನಾ ಮಂಡಳಿಯು ಅಂಥ ಪ್ರತಿಯೊಂದು ನಿರ್ದೇಶನವನ್ನು ಪಾಲಿಸತಕ್ಕದ್ದು.

**57. ದಂಡಗಳು.–** (1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿತವಾದ ನಿಯಮಗಳು ಉಪಬಂಧಗಳನ್ನು ಅಥವಾ ಯಾವುದೇ ಪರೀಕ್ಷಾ ವಿಷಯಗಳನ್ನು ಅಥವಾ ಪದವಿಗಳನ್ನು ನೀಡುವುದಕ್ಕೆ ಅಥವಾ ಅಂಕಪಟ್ಟಿಗಳನ್ನು ನೀಡುವುದಕ್ಕೆ ಸಂಬಂಧಪಟ್ಟ ವಿಷಯಗಳಲ್ಲಿ ಉಲ್ಲಂಘನೆಗಳನ್ನು ಮಾಡುವ ಯಾವೊಬ್ಬ ವ್ಯಕ್ತಿಯು, ಅಪರಾಧ ನಿರ್ಣಯವಾದ ಮೇಲೆ, ಐವತ್ತು ಸಾವಿರ ರೂಪಾಯಿಗಳಿಗೆ ಕಡಿಮೆಯಲ್ಲದ ಆದರೆ ಹತ್ತು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಆರು ತಿಂಗಳ ಅವಧಿಗಿಂತ ಕಡಿಮೆಯಲ್ಲದ ಆದರೆ ಎರಡು ವರ್ಷಗಳ ಅವಧಿಯವರೆಗೆ ವಿಸ್ತರಿಸಬಹುದಾದ ಕಾರಾವಾಸದಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು:

ಪರಂತು, ಅಪರಾಧವನ್ನು ಎಸಗುವಲ್ಲಿ ವಿಶ್ವವಿದ್ಯಾಲಯವೂ ಸಹ ಒಳಗೊಂಡಿರುವಲ್ಲಿ, ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಈ ಅಧಿನಿಯಮದ ಅಡಿಯಲ್ಲಿ ಮಂಜೂರು ಮಾಡಲಾದ ಅನುಮತಿ ಪತ್ರವನ್ನು ಹಿಂತೆಗೆದುಕೊಳ್ಳತಕ್ಕದ್ದು.

(2) ಈ ಪ್ರಕರಣದ ಅಡಿಯಲ್ಲಿಯ ದಂಡವನ್ನು ಇತರ ಯಾವುದೇ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಲಾದ ದಂಡಕ್ಕೆ ಬಾಧಕವಾಗದಂತೆ ವಿಧಿಸಬಹುದು.

**58. ಪ್ರವೇಶಿಸುವ ಮತ್ತು ಪರಿಶೋಧಿಸುವ ಅಧಿಕಾರ.–** ಈ ಉದ್ದೇಶಕ್ಕಾಗಿ, ರಾಜ್ಯಸರ್ಕಾರದಿಂದ ಪ್ರಾಧಿಕೃತಗೊಂಡ 'ಎ' ಸಮೂಹದ ಅಧಿಕಾರಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಯಾವೊಬ್ಬ ಅಧಿಕಾರಿಯು, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಶನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ 37) ಅಡಿಯಲ್ಲಿ ನಿರ್ದಿಷ್ಟಪಡಿಸಿರಬಹುದಾದ ಅಂಥ ಷರತ್ತುಗಳಿಗೆ ಒಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ, ಆ ಅಧಿನಿಯಮದ 9ನೇ ಪ್ರಕರಣದ ಅಡಿಯಲ್ಲಿ ಉಪಬಂಧಿಸಲಾದಂತಹವೇ ಅಧಿಕಾರಗಳನ್ನು ಚಲಾಯಿಸಲು ಮತ್ತು ಪ್ರಕಾರ್ಯಗಳನ್ನು ನೆರವೇರಿಸಲು ಅಧಿಕೃತನಾದ ಅಧಿಕಾರಿ ಎಂಬುದಾಗಿ ಭಾವಿಸತಕ್ಕದ್ದು.

**59. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ನಿರ್ದೇಶನವನ್ನು ನೀಡುವ ಅಧಿಕಾರ.–** (1) ವಿಶ್ವವಿದ್ಯಾಲಯವು ತನ್ನ ರಚನೆ ಅಥವಾ ನಿಗಮನವನ್ನು ನಿಯಂತ್ರಿಸುವ ಕಾನೂನಿಗೆ ಅನುಸಾರವಾಗಿ ತನ್ನ ಸಮಾಪನವನ್ನು ಉದ್ದೇಶಿಸಿದ್ದಲ್ಲಿ, ಅದು ಕನಿಷ್ಠ ಆರು ತಿಂಗಳ ಲಿಖಿತ ಪೂರ್ವ ಸೂಚನೆಯನ್ನು (ನೋಟಿಸು) ಸರ್ಕಾರಕ್ಕೆ ನೀಡತಕ್ಕದ್ದು.

(2) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಈ ಕೆಳಗಿನವುಗಳ ಬಗ್ಗೆ, ಎಂದರೆ:–

(i) ಪದವಿಯನ್ನು ನೀಡುವುದಕ್ಕಾಗಿ ಬೋಧನೆಯ ಗುಣಮಟ್ಟ;

(ii) ಶಿಕ್ಷಣದ ಗುಣಮಟ್ಟ;

(iii) ಉನ್ನತ ಶಿಕ್ಷಣದ ವ್ಯಾಪಾರೀಕರಣವನ್ನು ತಡೆಗಟ್ಟುವುದು;

(iv) ಅಧಿನಿಯಮದ ಉಪಬಂಧಗಳ ಉಲ್ಲಂಘನೆಯ ಬಗ್ಗೆ, ಯಾವುದಾದರೂ ಇದ್ದಲ್ಲಿ,
- ಇವುಗಳ ಬಗ್ಗೆ ವಿಶ್ವವಿದ್ಯಾಲಯದ ನಿಯತಕಾಲಿಕ ಪರಿವೀಕ್ಷಣೆಯನ್ನು ನಡೆಸತಕ್ಕದ್ದು ಮತ್ತು ಸರ್ಕಾರಕ್ಕೆ ವರದಿಯನ್ನು ಕಳುಹಿಸತಕ್ಕದ್ದು.

(3) ದುರ್ವ್ಯವಹರಣೆ, ದುರಾಡಳಿತ ಮತ್ತು ಅಶಿಸ್ತು ಆಗಿದೆ ಎಂಬುದನ್ನು ಗುರುತಿಸಿದರೆ, ಸರ್ಕಾರವು, ವಿಶ್ವವಿದ್ಯಾಲಯದ ಆಡಳಿತವರ್ಗದವರಿಗೆ ಆಡಳಿತವನ್ನು ಸರಿಪಡಿಸಬೇಕೆಂದು ನಿರ್ದೇಶನಗಳನ್ನು ನೀಡತಕ್ಕದ್ದು. ನಿಯಮಿಸಬಹುದಾದ ಅಂಥ ಅವಧಿಯೊಳಗೆ ಆ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುವ ಹಕ್ಕು ಸರ್ಕಾರದಲ್ಲಿ ನಿಹಿತವಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ವಿಧಾನವು, ಸರ್ಕಾರವು ಈ ಸಂಬಂಧದಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು:

ಪರಂತು, ವಿಶ್ವವಿದ್ಯಾಲಯವು ತನ್ನ ಕಾರಣಗಳನ್ನು ಹೇಳಿಕೊಳ್ಳಲು ಸಮಂಜಸ ಅವಕಾಶಗಳನ್ನು ನೀಡಿದ ಹೊರತು ಅಂಥ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

(5) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೋಟಿಸನ್ನು ಸ್ವೀಕರಿಸಿದ ಮೇಲೆ, ಸರ್ಕಾರವು ಸಂಬಂಧಿಸಿದ ನಿಯಂತ್ರಣಾ ಪ್ರಾಧಿಕಾರದೊಡನೆ ಸಮಾಲೋಚಿಸಿ, ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ಅಥವಾ ವ್ಯಾಸಂಗ ಕ್ರಮವನ್ನು ಪರಿಸಮಾಪನಗೊಳಿಸಲು ಉದ್ದೇಶಿಸಿದ ದಿನಾಂಕದಿಂದ, ವಿಶ್ವವಿದ್ಯಾಲಯದಲ್ಲಿ ನಿಯತ ವ್ಯಾಸಂಗ ಕ್ರಮಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕೊನೆಯ ತಂಡ (ಬ್ಯಾಚ್) ತನ್ನ ವ್ಯಾಸಂಗ ಕ್ರಮವನ್ನು ಮುಗಿಸುವವರೆಗೆ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು.

60. **ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು.**- (1) 59ನೇ ಪ್ರಕರಣದ (5)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ಅದರ ಆಡಳಿತಾತ್ಮಕ ವೆಚ್ಚಗಳನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಭರಿಸತಕ್ಕದ್ದು.

(2) ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ವಿಶ್ವವಿದ್ಯಾಲಯದ ವೆಚ್ಚವನ್ನು ಭರಿಸಲು 48, 49, 50 ಮತ್ತು 51ನೇ ಪ್ರಕರಣಗಳ ಅಡಿಯಲ್ಲಿ ಉಲ್ಲೇಖಿಸಲಾದ ನಿಧಿಯು ಸಾಕಷ್ಟು ಇಲ್ಲದಿದ್ದಲ್ಲಿ, ಅಂಥ ವೆಚ್ಚವನ್ನು ಸರ್ಕಾರವು, ವಿಶ್ವವಿದ್ಯಾಲಯದ ಸ್ವತ್ತುಗಳು ಮತ್ತು ಆಸ್ತಿಗಳನ್ನು ವಿಲೇ ಮಾಡುವ ಮೂಲಕ ಭರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಸಮಾಪನೆಯು ದುರ್ವ್ಯವಹರಣೆ ಅಥವಾ ದುರಾಡಳಿತದ ಕಾರಣಗಳಿಗಾಗಿ ಆಗಿದ್ದರೆ, ಸರ್ಕಾರವು ಅಂಥ ದುರ್ವ್ಯವಹಾರಕ್ಕೆ ಅಥವಾ ದುರಾಡಳಿತಕ್ಕೆ ಹೊಣೆಯಾಗಿರುವ ವ್ಯಕ್ತಿಗಳನ್ನು ಗುರುತಿಸುವ ಮತ್ತು ಅವರ ಮೇಲೆ ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ದಂಡನೆಯನ್ನು ವಿಧಿಸಲು ಸ್ವತಂತ್ರವಾಗಿರತಕ್ಕದ್ದು.

61. **ತೊಂದರೆಗಳ ನಿವಾರಣೆಗೆ ಅಧಿಕಾರ.**- (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಅಥವಾ ಆದೇಶದ ಮೂಲಕ ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಐದು ವರ್ಷಗಳು ಮುಕ್ತಾಯವಾದ ತರುವಾಯ ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಅಧಿಸೂಚನೆ ಅಥವಾ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು ಅದನ್ನು ರಚಿಸಿದ ತರುವಾಯ ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

62. **ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ.**- (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ

ನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ಧತಿಯು ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವನ್ನು ಉಂಟುಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಕೆ.ದ್ವಾರಕನಾಥ್ ಬಾಬು**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು (ಪ7) ಪ್ರತಿಗಳು 300

No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| | | |
|---|---|---|
| ಭಾಗ-IVA | ಬೆಂಗಳೂರು, ಶನಿವಾರ, ಮಾರ್ಚ್ ೨, ೨೦೧೯ (ಫಾಲ್ಗುಣ ೧೧, ಶಕ ವರ್ಷ ೧೯೪೦) | ನಂ. ೧೬೨ |
| *Part-IVA* | *Bengaluru, Saturday, March 2, 2019 (Palguna 11, Shaka Varsha 1940)* | *No. 162* |

ಸಂಸದೀಯ ವ್ಯವಹಾರಗಳ ಸಚಿವಾಲಯ

ಅಧಿಸೂಚನೆ

**ಸಂಖ್ಯೆ: ಸಂವ್ಯಶಾಇ 07 ಶಾಸನ 2019, ಬೆಂಗಳೂರು, ದಿನಾಂಕ: 02.03.2019**

ಆರ್.ವಿ ವಿಶ್ವವಿದ್ಯಾಲಯ ವಿಧೇಯಕ, 2019ಕ್ಕೆ 2019ರ ಫೆಬ್ರವರಿ ತಿಂಗಳ 28ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2019ರ ಕರ್ನಾಟಕ ಅಧಿನಿಯಮ ಸಂಖ್ಯೆ: 11 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2019ರ ಕರ್ನಾಟಕ ಅಧಿನಿಯಮ ಸಂಖ್ಯೆ: 11**

(2019ರ ಮಾರ್ಚ್ ತಿಂಗಳ ಎರಡನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಆರ್.ವಿ ವಿಶ್ವವಿದ್ಯಾಲಯ ಅಧಿನಿಯಮ, 2019

(2019ರ ಫೆಬ್ರವರಿ ತಿಂಗಳ ಇಪ್ಪತ್ತೆಂಟನೇ ದಿನಾಂಕದಂದು ರಾಜ್ಯಪಾಲರಿಂದ ಅನುಮೋದನೆಯನ್ನು ಪಡೆಯಲಾಗಿದೆ)

ವಿಜ್ಞಾನಗಳು, ಇಂಜನಿಯರಿಂಗ್‌ನ ಎಲ್ಲಾ ಶಾಖೆಗಳು, ಕಲೆ, ವ್ಯವಸ್ಥಾಪನೆ, ಆರೋಗ್ಯ, ವೈದ್ಯಕೀಯ, ವಾಣಿಜ್ಯ, ಕಾನೂನು, ಔಷಧ ಶಾಸ್ತ್ರ (ಫಾರ್ಮಸಿ) ಮತ್ತು ಅದಕ್ಕೆ ಸಂಬಂಧಿಸಿದ ಅಥವಾ ಅದಕ್ಕೆ ಪ್ರಾಸಂಗಿಕವಾದ ಇತರ ವಿಷಯಗಳಿಗಾಗಿ ಅನ್ವಯಿಕ ವಿಶ್ವವಿದ್ಯಾಲಯ ಶಿಕ್ಷಣದ ಅಭಿವೃದ್ಧಿಯನ್ನು ಪ್ರೋತ್ಸಾಹಿಸಲು ಮತ್ತು ಕೈಗೊಳ್ಳಲು ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್ ಮೂಲಕ ಖಾಸಗಿ ವಲಯದಲ್ಲಿ ಏಕಾತ್ಮಕ ಸ್ವರೂಪದ ಒಂದು ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸಲು ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ವಿಜ್ಞಾನಗಳು, ಇಂಜನಿಯರಿಂಗ್‌ನ ಎಲ್ಲಾ ಶಾಖೆಗಳು, ಕಲೆ, ವ್ಯವಸ್ಥಾಪನೆ, ಆರೋಗ್ಯ, ವೈದ್ಯಕೀಯ, ವಾಣಿಜ್ಯ, ಕಾನೂನು, ಔಷಧ ಶಾಸ್ತ್ರ (ಫಾರ್ಮಸಿ) ಮತ್ತು ಅದಕ್ಕೆ ಸಂಬಂಧಿಸಿದ ಅಥವಾ ಅದಕ್ಕೆ ಪ್ರಾಸಂಗಿಕವಾದ ಇತರ ವಿಷಯಗಳಿಗಾಗಿ ಅನ್ವಯಿಕ ವಿಶ್ವವಿದ್ಯಾಲಯ ಶಿಕ್ಷಣದ ಅಭಿವೃದ್ಧಿಯನ್ನು ಪ್ರೋತ್ಸಾಹಿಸಲು ಮತ್ತು ಕೈಗೊಳ್ಳಲು ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್ ಮೂಲಕ ಖಾಸಗಿ ವಲಯದಲ್ಲಿ ಏಕಾತ್ಮಕ ಸ್ವರೂಪದ ಒಂದು ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

## ಅಧ್ಯಾಯ – I
## ಪ್ರಾರಂಭಿಕ

**1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.**- (1) ಈ ಅಧಿನಿಯಮವನ್ನು ಆರ್.ವಿ ವಿಶ್ವವಿದ್ಯಾಲಯ ಅಧಿನಿಯಮ, 2019 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. ಪರಿಭಾಷೆಗಳು.**- ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) "ಶೈಕ್ಷಣಿಕ ಪರಿಷತ್ತು (ಅಕೆಡೆಮಿಕ್ ಕೌನ್ಸಿಲ್)" ಎಂದರೆ, 26ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿಸಲಾದ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು;

(ಬಿ) "ಕಾರ್ಯಸೂಚಿ ವಿಷಯಗಳು", ಎಂದರೆ, ಪರಿನಿಯಮಗಳಲ್ಲಿ ಹೆಸರಿಸಬಹುದಾದ ಮತ್ತು ಒಂದು ಸಭೆಯಲ್ಲಿ ಆ ವಿಷಯಗಳನ್ನು ಮತ್ತು ಕಲಾಪಗಳನ್ನು ಅನುಮೋದಿಸಬಹುದೆಂದು ತಮ್ಮ ಸಮ್ಮತಿ ಸೂಚಿಸಿ ಕುಲಾಧಿಪತಿಯವರು ಮುಂಚಿತವಾಗಿಯೇ ಲಿಖಿತ ಅನುಮೋದನೆಯನ್ನು ಕೊಟ್ಟಿದ್ದಾಗ ಮಾತ್ರವೇ, ಪ್ರಬಂಧಕರ ಮಂಡಳಿ ಅಥವಾ ವ್ಯವಸ್ಥಾಪನಾ ಮಂಡಳಿ ಅಥವಾ ಸಂದರ್ಭಾನುಸಾರವಾಗಿ ಯಾವುದೇ ಸಮಿತಿಯವರು ಕಾರ್ಯಸೂಚಿಯಲ್ಲಿ ಸೇರಿಸಬಹುದಾದ ಅಥವಾ ಸಭೆಯಲ್ಲಿ ಚರ್ಚೆಗೆ ತೆಗೆದುಕೊಂಡು ನಿರ್ಣಯವನ್ನು ಕೊಡಬಹುದಾದ ಎಲ್ಲಾ ವಿಷಯಗಳು ಮತ್ತು ಕಲಾಪಗಳು;

(ಸಿ) "ಪ್ರಬಂಧಕರ ಮಂಡಳಿ" ಎಂದರೆ, 24ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಪ್ರಬಂಧಕರ ಮಂಡಳಿ;

(ಡಿ) "ವ್ಯವಸ್ಥಾಪನಾ ಮಂಡಳಿ" ಎಂದರೆ 25ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದಂತೆ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿ;

(ಇ) "ಕುಲಾಧಿಪತಿ", "ಕುಲಪತಿ", "ಸಹಕುಲಪತಿ" ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ ಮತ್ತು ಸಹಕುಲಪತಿ;

(ಎಫ್) "ಕ್ಯಾಂಪಸ್" ಎಂದರೆ, ಅದು ಎಲ್ಲಿಯೇ ಇದ್ದರೂ, ವಿಶ್ವವಿದ್ಯಾಲಯವು ಸ್ಥಾಪಿಸಿದ, ನಿರ್ವಹಿಸುವ ಒಂದು ಕ್ಯಾಂಪಸ್;

(ಜಿ) "ಸಮಿತಿಗಳು" ಎಂದರೆ, ಈ ಅಧಿನಿಯಮದಡಿಯಲ್ಲಿ ರೂಪಿಸಲಾದ ಸಮಿತಿಗಳು ಅಥವಾ ಸಂದರ್ಭಾನುಸಾರವಾಗಿ ವಿಶ್ವವಿದ್ಯಾಲಯದ ವಿವಿಧ ಕಾರ್ಯಕರ್ತರು ರಚಿಸಿರುವ ಸಮಿತಿಗಳು ಮತ್ತು ಅದರಲ್ಲಿ ನಾಮನಿರ್ದೇಶನ ಸಮಿತಿ, ಹಣಕಾಸು ಸಮಿತಿ ಮತ್ತು ಅಂಥ ಇತರ ಸಮಿತಿಗಳು ಒಳಗೊಳ್ಳುತ್ತವೆ;

(ಎಚ್) "ಘಟಕ ಕಾಲೇಜು" ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುತ್ತಿರುವ ಒಂದು ಕಾಲೇಜು ಅಥವಾ ಸಂಸ್ಥೆ;

(ಐ) "ಹಣಕಾಸು ಸಮಿತಿ" ಎಂದರೆ, 28ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಹಣಕಾಸು ಸಮಿತಿ;

(ಜೆ) "ಸರ್ಕಾರ" ಎಂದರೆ, ಕರ್ನಾಟಕ ಸರ್ಕಾರ;

(ಕೆ) "ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳು" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು, ಭಾರತೀಯ ವೈದ್ಯಕೀಯ ಪರಿಷತ್ತು, ಭಾರತೀಯ ಔಷಧ ವಿಜ್ಞಾನ ಪರಿಷತ್ತು, ಭಾರತೀಯ ವೈದ್ಯಪದ್ಧತಿಯ ರಾಷ್ಟ್ರೀಯ ಪರಿಷತ್ತು, ಭಾರತೀಯ ದಂತ ವೈದ್ಯಕೀಯ ಪರಿಷತ್ತು, ಶಿಕ್ಷಕರ ಶಿಕ್ಷಣದ ರಾಷ್ಟ್ರೀಯ ಪರಿಷತ್ತು, ಭಾರತೀಯ ಬಾರ್ ಕೌನ್ಸಿಲ್, ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಪರಿಷತ್ತು, ವಾಸ್ತುಶಿಲ್ಪ ಪರಿಷತ್ತು, ಭಾರತೀಯ ನರ್ಸಿಂಗ್ ಪರಿಷತ್ತು, ಇಂಥವುಗಳಲ್ಲಿ ಉನ್ನತ ಶಿಕ್ಷಣದಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುವಂತೆ ನೋಡಿಕೊಳ್ಳುವುದಕ್ಕಾಗಿ ಗುಣಮಟ್ಟಗಳು ಮತ್ತು ಷರತ್ತುಗಳನ್ನು ವಿಧಿಸುವುದಕ್ಕಾಗಿ, ಕೇಂದ್ರ ಸರ್ಕಾರವು ಸ್ಥಾಪಿಸಿರುವ ಒಂದು ಸಂಸ್ಥೆ ಮತ್ತು ಇದು ಸರ್ಕಾರವನ್ನು ಒಳಗೊಳ್ಳುತ್ತದೆ;

(ಎಲ್) "ನಿಯಮಿಸಲಾದುದು" ಎಂದರೆ, ಈ ಅಧಿನಿಯಮದಡಿಯಲ್ಲಿ ಸರ್ಕಾರವು ರಚಿಸಿದ ನಿಯಮಗಳ ಮೂಲಕ ನಿಯಮಿಸಲಾದುದು;

(ಎಂ) "ಒಂದು ಘಟಕ ಕಾಲೇಜಿಗೆ ಸಂಬಂಧಪಟ್ಟಂತೆ ಪ್ರಾಂಶುಪಾಲರು" ಎಂದರೆ, ಘಟಕ ಕಾಲೇಜಿನ ಮುಖ್ಯಸ್ಥರು ಮತ್ತು ಪ್ರಾಂಶುಪಾಲರು ಇಲ್ಲದಿದ್ದಲ್ಲಿ ಅಥವಾ ನೇಮಕವಾದ ಪ್ರಾಂಶುಪಾಲರ ಗೈರುಹಾಜರಿಯಲ್ಲಿ, ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ತಾತ್ಕಾಲಿಕವಾಗಿ ನೇಮಕಗೊಂಡಿರುವ ಉಪಪ್ರಾಂಶುಪಾಲರು ಅಥವಾ ಯಾವುದೇ ಇತರ ವ್ಯಕ್ತಿಯೂ ಇದರಲ್ಲಿ ಒಳಗೊಳ್ಳುತ್ತಾರೆ;

(ಎನ್) "ಕುಲಸಚಿವರು" ಎಂದರೆ, ವಿಶ್ವವಿದ್ಯಾಲಯದ ಕುಲಸಚಿವರು;

(ಒ) "ಪ್ರಾದೇಶಿಕ ಕೇಂದ್ರ" ಎಂದರೆ, ಯಾವುದೇ ಪ್ರದೇಶದಲ್ಲಿನ ಅಧ್ಯಯನ ಕೇಂದ್ರಗಳ ಕಾರ್ಯವನ್ನು ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ಮಾಡುವ ಉದ್ದೇಶಕ್ಕಾಗಿ ಮತ್ತು ಅಂಥ ಕೇಂದ್ರಕ್ಕೆ ವ್ಯವಸ್ಥಾಪನಾ ಮಂಡಳಿಯು ಪ್ರದತ್ತ ಮಾಡಬಹುದಾದ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸುವುದಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಅಥವಾ ನಿರ್ವಹಿಸಿಕೊಂಡುಬರುವ ಒಂದು ಕೇಂದ್ರ;

(ಪಿ) ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ "ಪ್ರಾಯೋಜಕ ಪ್ರಾಧಿಕಾರ" ಅಥವಾ "ಪ್ರಾಯೋಜಕ ಸಂಸ್ಥೆ" ಎಂದರೆ ಟ್ರಸ್ಟ್;

(ಕ್ಯೂ) "ರಾಜ್ಯ" ಎಂದರೆ, ಕರ್ನಾಟಕ ರಾಜ್ಯ;

(ಆರ್) "ಪರಿನಿಯಮಗಳು" ಮತ್ತು "ವಿನಿಯಮಗಳು" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಅನುಕ್ರಮವಾಗಿ ವಿಶ್ವವಿದ್ಯಾಲಯದ ಪರಿನಿಯಮಗಳು ಮತ್ತು ವಿನಿಯಮಗಳು;

(ಎಸ್) "ಅಧ್ಯಯನ ಕೇಂದ್ರ" ಎಂದರೆ, ವಿದ್ಯಾರ್ಥಿಗಳಿಗೆ ಶಿಕ್ಷಣದ ಸಂಬಂಧದಲ್ಲಿ ಸಲಹೆಗಳನ್ನು ನೀಡುವ, ಸಮಾಲೋಚನೆ ಮಾಡುವ ಅಥವಾ ಇತರ ಯಾವುದೇ ನೆರವನ್ನು ನೀಡುವ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಮತ್ತು ನಿರ್ವಹಿಸಿಕೊಂಡುಬಂದ ಒಂದು ಕೇಂದ್ರ;

(ಟಿ) "ಅಧ್ಯಾಪಕರು" ಎಂದರೆ, ಒಬ್ಬ ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಒಂದು ಘಟಕ ಕಾಲೇಜಿನಲ್ಲಿ ಬೋಧಿಸುವುದಕ್ಕೆ ಅಥವಾ ಸಂಶೋಧನೆ ನಡೆಸುವುದಕ್ಕೆ ಅಥವಾ ಸಂಶೋಧನೆಗೆ ಮಾರ್ಗದರ್ಶನ ನೀಡುವುದಕ್ಕೆ ನೇಮಕವಾದ ಅಂಥ ಇತರ ವ್ಯಕ್ತಿ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗವು ನಿರ್ದಿಷ್ಟಪಡಿಸಿದ ಗುಣಮಟ್ಟಗಳಿಗೆ ಅನುಸಾರವಾಗಿ ಇರುವ ಘಟಕ ಕಾಲೇಜಿನ ಪ್ರಾಂಶುಪಾಲರು ಇದರಲ್ಲಿ ಒಳಗೊಳ್ಳುತ್ತಾರೆ;

(ಯು) "ಟ್ರಸ್ಟ್" ಎಂದರೆ, ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್ ;

(ವಿ) "ವಿಶ್ವವಿದ್ಯಾಲಯ ಅನುದಾನಗಳ ಆಯೋಗ" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) 4ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ಆಯೋಗ;

(ಡಬ್ಲ್ಯೂ) "ವಿಶ್ವವಿದ್ಯಾಲಯ" ಎಂದರೆ, ಆರ್.ವಿ. ವಿಶ್ವವಿದ್ಯಾಲಯ;

(ಎಕ್ಸ್) "ಸಂದರ್ಶಕರು" ಎಂದರೆ, 13ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ವಿಶ್ವವಿದ್ಯಾಲಯದ ಸಂದರ್ಶಕರು.

## ಅಧ್ಯಾಯ– II

## ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

**3. ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ.–** (1) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಹಕ್ಕನ್ನು ಟ್ರಸ್ಟ್ ಹೊಂದಿರತಕ್ಕದ್ದು.

(2) ಟ್ರಸ್ಟ್ ರಾಜ್ಯ ಸರ್ಕಾರಕ್ಕೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವವನ್ನು ಸಲ್ಲಿಸತಕ್ಕದ್ದು.

(3) ಪ್ರಸ್ತಾವವು ಈ ಮುಂದಿನ ವಿವರಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಟ್ರಸ್ಟಿನ ವಿವರಗಳೊಂದಿಗೆ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು;

(ii) ವಿಶ್ವವಿದ್ಯಾಲಯದ ವ್ಯಾಪ್ತಿ ಮತ್ತು ಸ್ಥಾನಮಾನ ಹಾಗೂ ಭೂಮಿಯ ಲಭ್ಯತೆ;

(iii) ಪ್ರಾರಂಭದ ದಿನಾಂಕದಿಂದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳಬೇಕೆಂದಿರುವ ಅಧ್ಯಯನ ಮತ್ತು ಸಂಶೋಧನಾ ಕಾರ್ಯಕ್ರಮಗಳ ಸ್ವರೂಪ ಮತ್ತು ಬಗೆಗಳು;

(iv) ಪ್ರಾರಂಭಿಸಬೇಕೆಂದು ಪ್ರಸ್ತಾಪಿಸಿರುವ ವ್ಯಾಸಂಗ ವಿಭಾಗಗಳು (ಫ್ಯಾಕಲ್ಟಿಗಳು), ಅಧ್ಯಯನ ಕ್ರಮಗಳು ಮತ್ತು ಸಂಶೋಧನೆಗಳ ಸ್ವರೂಪ;

(v) ಕಟ್ಟಡಗಳು, ಸಲಕರಣೆಗಳು ಮತ್ತು ರಚನಾ ಸೌಕರ್ಯಗಳನ್ನು ಒದಗಿಸುವಂಥ ಕ್ಯಾಂಪಸ್ ಅಭಿವೃದ್ಧಿ;

(vi) ಪ್ರಾರಂಭದ ದಿನಾಂಕದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಗಾಗಿ ಬಂಡವಾಳ ವೆಚ್ಚ ಹಂತಗಳು;

(vii) ಬಾಬುವಾರು ಆವರ್ತಕ ವೆಚ್ಚ, ಆರ್ಥಿಕ ಮೂಲಗಳು ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ತಗಲುವ ಅಂದಾಜು ವೆಚ್ಚ;

(viii) ಸಂಪನ್ಮೂಲ ಸಂಗ್ರಹಣೆಗಾಗಿ ಯೋಜನೆ ಮತ್ತು ಅದಕ್ಕೆ ಬಂಡವಾಳದಿಂದ ತಗಲುವ ವೆಚ್ಚ ಹಾಗೂ ಪ್ರತಿಯೊಂದು ಮೂಲಕ್ಕೂ ಮರು ಸಂದಾಯ ಮಾಡುವ ರೀತಿ;

(ix) ವಿದ್ಯಾರ್ಥಿಗಳಿಂದ ಶುಲ್ಕ ವಸೂಲು ಮಾಡಿ ಆಂತರಿಕವಾಗಿ ನಿಧಿ ಸಂಗ್ರಹಿಸುವ ಯೋಜನೆ, ಸಲಹಾ ಸೇವೆ ಮತ್ತು ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಿಗೆ ಸಂಬಂಧಿಸಿದ ಇತರ ಚಟುವಟಿಕೆಗಳಿಂದ ನಿರೀಕ್ಷಿತ ವರಮಾನಗಳು ಮತ್ತು ಇತರ ನಿರೀಕ್ಷಿತ ವರಮಾನಗಳು;

(x) ಘಟಕವೊಂದಕ್ಕೆ ತಗಲುವ ವೆಚ್ಚದ ವಿವರಗಳು, ಆರ್ಥಿಕವಾಗಿ ದುರ್ಬಲವಾದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕ, ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿ ವೇತನದಲ್ಲಿ ನೀಡುವ ರಿಯಾಯಿತಿ ಅಥವಾ ವಿನಾಯತಿಯ ಪರಿಮಿತಿಯ ವಿವರಗಳನ್ನು ಮತ್ತು ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳಿಗೆ ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳು ಪ್ರಾಯೋಜಿಸಿದ ವಿದ್ಯಾರ್ಥಿಗಳಿಗೆ ಮತ್ತು ಭಾರತವನ್ನುಳಿದು ಇತರ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ವಿಧಿಸತಕ್ಕ ಶುಲ್ಕದ ದರಗಳು ಬೇರೆ ಬೇರೆ ಇದ್ದಲ್ಲಿ ಅವುಗಳನ್ನು ಸೂಚಿಸುವ ಶುಲ್ಕ ರಚನೆಯ ವಿವರಗಳು;

(xi) ಸಂಬಂಧಪಟ್ಟ ವಿದ್ಯಾ ವಿಭಾಗದಲ್ಲಿ ಟ್ರಸ್ಟ್ ದೊರಕಿಸಿಕೊಡಲಿರುವ ವರ್ಷಗಳ ಅನುಭವ ಮತ್ತು ಪರಿಣಿತಿ ಹಾಗೂ ಅದರ ಹಣಕಾಸಿನ ಸಂಪನ್ಮೂಲಗಳು;

(xii) ವಿಶ್ವವಿದ್ಯಾಲಯದಲ್ಲಿರುವ ಅಧ್ಯಯನ ಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕಾಗಿ ಇರುವ ವ್ಯವಸ್ಥೆ ; ಮತ್ತು

(xiii) ವಿಶ್ವವಿದ್ಯಾಲಯವು ಸ್ಥಾಪನೆಯಾಗುವುದಕ್ಕೆ ಮೊದಲು ನೆರವೇರಿಸಬೇಕೆಂದು ರಾಜ್ಯ ಸರ್ಕಾರವು ಅಗತ್ಯಪಡಿಸಬಹುದಾದ ಅಂಥ ಇತರ ಷರತ್ತುಗಳ ನೆರವೇರಿಕೆಯ ಹಂತ.

(4) ರಾಜ್ಯ ಸರ್ಕಾರವು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಪದನಿಮಿತ್ತ ಸದಸ್ಯರಾದ ಮೂವರು ಸದಸ್ಯರುಗಳನ್ನು ಒಳಗೊಂಡ ಒಂದು ಶೋಧನಾ ಸಮಿತಿಯನ್ನು ರಚಿಸತಕ್ಕದ್ದು ಮತ್ತು ಅದು ವಿಶ್ವವಿದ್ಯಾಲಯದ ಸ್ಥಾಪನೆಗೆ ರಾಜ್ಯ ಸರ್ಕಾರಕ್ಕೆ ಶಿಫಾರಸ್ಸುಗಳನ್ನು ಮಾಡತಕ್ಕದ್ದು.

**4. ವಿಶ್ವವಿದ್ಯಾಲಯದ ಸ್ಥಾಪನೆ.–** (1) ರಾಜ್ಯ ಸರ್ಕಾರವು ಶೋಧನಾ ಸಮಿತಿಯು ಮಾಡಿದ ಶಿಫಾರಸ್ಸುಗಳನ್ನು ಪರಿಶೀಲಿಸಿದ ತರುವಾಯ ಮತ್ತು ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ, ಈ ಮುಂದಿನವುಗಳನ್ನು ಹೊಂದಿದೆ ಎಂದು ಮನಗಾಣತಕ್ಕದ್ದು, ಎಂದರೆ:–

(i) ಸಾಕಷ್ಟು ಮೂಲ ಸೌಕರ್ಯಗಳೊಂದಿಗೆ, ವಿಶ್ವವಿದ್ಯಾಲಯವನ್ನು ನಡೆಸಲು ಟ್ರಸ್ಟಿನ ಸಾಮರ್ಥ್ಯ;

(ii) ಅದು ಇರುವ ಸ್ಥಳದ ಅನುಸಾರವಾಗಿ ಕೆಳಗೆ ನಿರ್ದಿಷ್ಟಪಡಿಸಿದ ವ್ಯಾಪ್ತಿಯಲ್ಲಿ ಭೂಮಿಯ ಮಾಲಿಕತ್ವವನ್ನು ಹೊಂದಿದೆ, ಎಂದರೆ :–

(ಎ) ಅದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯೊಳಗಿದ್ದರೆ ಇಪ್ಪತ್ತೈದು ಎಕರೆ ಭೂಮಿ;

(ಬಿ) ಅದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮಿತಿಯ ಹೊರಗೆ ಆದರೆ ಬೆಂಗಳೂರು ಮೆಟ್ರೋಪಾಲಿಟನ್ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಪ್ರದೇಶದ ಒಳಗಿದ್ದರೆ ನಲವತ್ತು ಎಕರೆ ಭೂಮಿ;

(ಸಿ) (ಎ) ಮತ್ತು (ಬಿ) ಖಂಡಗಳಲ್ಲಿ ನಿರ್ದಿಷ್ಟಪಡಿಸಿದ ಸ್ಥಳಗಳನ್ನು ಹೊರತುಪಡಿಸಿ ಇತರ ಸ್ಥಳಗಳಲ್ಲಿ ಐವತ್ತು ಎಕರೆಗಳಿಗೆ ಕಡಿಮೆಯಿಲ್ಲದಷ್ಟು ಭೂಮಿ.

ಮೇಲೆ ನಿರ್ದಿಷ್ಟಪಡಿಸಿದ ಭೂಮಿಯು ಏಕ ಘಟಕ (ಸಿಂಗಲ್ ಬ್ಲಾಕ್) ದಲ್ಲಿರತಕ್ಕದ್ದು ಮತ್ತು ಇದು ಸಂಬಂಧಪಟ್ಟ ಟ್ರಸ್ಟ್ ಅಥವಾ ಸಂಸ್ಥೆ ಅಥವಾ ವಿಶ್ವವಿದ್ಯಾಲಯದ ಹೆಸರಿನಲ್ಲಿರತಕ್ಕದ್ದು. 3ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ಅಗತ್ಯಪಡಿಸಲಾದಂತೆ ಒದಗಿಸಿದ ವಿವರಗಳ ಆಧಾರದ ಮೇಲೆ ಸರ್ಕಾರವು 48ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಬೇಕೆಂದು ಟ್ರಸ್ಟ್‌ಗೆ ನಿರ್ದೇಶನ ನೀಡಬಹುದು;

(2) ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಸ್ಥಾಪನೆಯ ತರುವಾಯ, ರಾಜ್ಯ ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, ಆರ್.ವಿ ವಿಶ್ವವಿದ್ಯಾಲಯ ಎಂಬ ಹೆಸರಿನ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ರಾಜ್ಯದಲ್ಲಿ ಸ್ಥಾಪಿಸುವುದಕ್ಕೆ ಮಂಜೂರಾತಿಯನ್ನು ನೀಡಬಹುದು.

(3) ವಿಶ್ವವಿದ್ಯಾಲಯದ ಕೇಂದ್ರ ಕಾರ್ಯಸ್ಥಾನವು ಬೆಂಗಳೂರಿನಲ್ಲಿ ಇರತಕ್ಕದ್ದು. ವಿಶ್ವವಿದ್ಯಾಲಯವು ತನ್ನ ಕ್ಯಾಂಪಸ್ಸುಗಳನ್ನು ಅಥವಾ ಪ್ರಾದೇಶಿಕ ಕೇಂದ್ರಗಳನ್ನು, ಅಧ್ಯಯನ ಕೇಂದ್ರಗಳನ್ನು ಕರ್ನಾಟಕದಲ್ಲಿ ಎಲ್ಲಿಯಾದರೂ

ಹೊಂದಿರತಕ್ಕದ್ದು ಮತ್ತು ಇದು ರಾಜ್ಯ ಸರ್ಕಾರದ ಪೂರ್ವಾನುಮತಿಯನ್ನು ಪಡೆದುಕೊಳ್ಳುವುದಕ್ಕೊಳಪಟ್ಟಿರತಕ್ಕದ್ದು ಹಾಗೂ ವಿಶ್ವವಿದ್ಯಾಲಯ ಅನುದಾನಗಳ ಆಯೋಗದ ಗುಣಮಟ್ಟಗಳಿಗನುಸಾರವಾಗಿರತಕ್ಕದ್ದು.

(4) ಮೊದಲ ಕುಲಾಧಿಪತಿಯವರು, ಮೊದಲ ಕುಲಪತಿಯವರು, ಪ್ರಬಂಧಕ ಮಂಡಳಿಯ ಮೊದಲ ಸದಸ್ಯರುಗಳು, ವ್ಯವಸ್ಥಾಪನಾ ಮಂಡಳಿಯ ಹಾಗೂ ಶೈಕ್ಷಣಿಕ ಪರಿಷತ್ತಿನ ಮೊದಲ ಸದಸ್ಯರುಗಳು ಮತ್ತು ಇನ್ನು ಮುಂದೆ, ಅಂಥ ಅಧಿಕಾರಿಗಳು ಅಥವಾ ಸದಸ್ಯರುಗಳಾಗಬಹುದಾದಂಥ ಎಲ್ಲಾ ವ್ಯಕ್ತಿಗಳು, ಅಂಥ ಪದ ಅಥವಾ ಸದಸ್ಯತ್ವವನ್ನು ಹೊಂದಿರುವುದು ಮುಂದುವರೆಯುವವರೆಗೆ, ಒಂದು ನಿಗಮಿತ ನಿಕಾಯವನ್ನು ರಚಿಸತಕ್ಕದ್ದು ಮತ್ತು ಅದು ವಿಶ್ವವಿದ್ಯಾಲಯದ ಹೆಸರಿನಲ್ಲಿ ದಾವೆ ಹೂಡಬಹುದು ಮತ್ತು ದಾವೆಗೊಳಗಾಗಬಹುದು.

(5) (2)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯವು ಸ್ಥಾಪನೆಗೆ ಮಂಜೂರಾತಿಯಾದ ಮೇಲೆ, ವಿಶ್ವವಿದ್ಯಾಲಯದ ಉದ್ದೇಶಕ್ಕಾಗಿ, ಟ್ರಸ್ಟ್ ಆರ್ಜಿಸಿದ, ಸೃಜಿಸಿದ, ಏರ್ಪಾಟು ಮಾಡಿಕೊಂಡ ಅಥವಾ ಕಟ್ಟಲ್ಪಟ್ಟ ಭೂಮಿ ಮತ್ತು ಇತರ ಸ್ಥಿರ ಮತ್ತು ಚರ ಸ್ವತ್ತು, ವಿಶ್ವವಿದ್ಯಾಲಯದಲ್ಲಿ ನಿಹಿತವಾಗಿರತಕ್ಕದ್ದು.

(6) ವಿಶ್ವವಿದ್ಯಾಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದ ಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂಥ ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

(7) ವಿಶ್ವವಿದ್ಯಾಲಯದಲ್ಲಿನ ಭೂಮಿ, ಕಟ್ಟಡ ಮತ್ತು ಇತರ ಸ್ವತ್ತುಗಳನ್ನು ವಿಶ್ವವಿದ್ಯಾಲಯದ ಉದ್ದೇಶಗಳಿಗೆ ಆನುಷಂಗಿಕವಾಗಿರುವುದನ್ನು ಹೊರತುಪಡಿಸಿ ಇತರ ಯಾವುದೇ ಉದ್ದೇಶಕ್ಕಾಗಿ ಬಳಸತಕ್ಕದ್ದಲ್ಲ.

**5. ಅನುದಾನಗಳು ಮತ್ತು ಹಣಕಾಸು ನೆರವು.–** ವಿಶ್ವವಿದ್ಯಾಲಯವು ಸ್ವಂತ ಧನಮೂಲವುಳ್ಳ ಲಾಭರಹಿತ ಸಂಸ್ಥೆಯಾಗಿರತಕ್ಕದ್ದು ರಾಜ್ಯದಿಂದ ಅಥವಾ ರಾಜ್ಯದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಇತರ ಸಂಸ್ಥೆ ಅಥವಾ ನಿಗಮದಿಂದ ಯಾವುದೇ ನಿರ್ವಹಣಾ ಸಹಾಯ ಅನುದಾನ ಅಥವಾ ಯಾವುದೇ ಹಣಕಾಸು ನೆರವನ್ನು ಹಕ್ಕಿನಿಂದ ಕೇಳತಕ್ಕದ್ದಲ್ಲ ಅಥವಾ ಅದನ್ನು ಪಡೆಯಲು ಹಕ್ಕನ್ನು ಹೊಂದಿರತಕ್ಕದ್ದಲ್ಲ:

ಪರಂತು, ರಾಜ್ಯವು,–

(ಎ) ಇತರ ರಾಜ್ಯ ಸರ್ಕಾರದ ಸಂಘಟನೆಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿರುವಂಥದ್ದೇ ಸಂಶೋಧನೆ, ಅಭಿವೃದ್ಧಿ ಮತ್ತಿತರ ಚಟುವಟಿಕೆಗಳಿಗಾಗಿ; ಅಥವಾ

(ಬಿ) ರಾಜ್ಯ ಸರ್ಕಾರದಿಂದ ನೆರವನ್ನು ಪಡೆಯುವ ಯಾವುದೇ ನಿರ್ದಿಷ್ಟ ಸಂಶೋಧನೆ ಅಥವಾ ಕಾರ್ಯಕ್ರಮಗಳಿಗಾಗಿ; ಅಥವಾ

(ಸಿ) ರಾಜ್ಯ ಕಾರ್ಯನೀತಿಯ ಬದಲಾವಣೆಗೆ ಒಳಪಟ್ಟು ಅಥವಾ ಅನ್ಯಥಾ ಇದೇ ಬಗೆಯ ವಿಶ್ವವಿದ್ಯಾಲಯಗಳ ಪ್ರಯೋಜನಕ್ಕಾಗಿ,

– ಅನುದಾನದ ಮೂಲಕ ಅಥವಾ ಅನ್ಯಥಾ ಹಣಕಾಸು ಬೆಂಬಲವನ್ನು ಒದಗಿಸಬಹುದು:

ಮತ್ತು ಪರಂತು, ವಿಶ್ವವಿದ್ಯಾಲಯವು, ಯಾವುದೇ ಇತರ ಮೂಲದಿಂದ ಯಾವುದೇ ಆರ್ಥಿಕ ನೆರವನ್ನು ಸ್ವೀಕರಿಸಬಹುದು.

**6. ಘಟಕ ಕಾಲೇಜು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಅಥವಾ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದಕ್ಕೆ ಅಧಿಕಾರ.–** ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಐದು ವರ್ಷಗಳನ್ನು ಪೂರ್ಣಗೊಳಿಸಿದ ನಂತರ, ವಿಶ್ವವಿದ್ಯಾಲಯ ಅನುದಾನ ಆಯೋಗದ ಮತ್ತು ಇತರ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ಗುಣಮಟ್ಟಗಳಿಗೆ ಒಳಪಟ್ಟು, ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ, ವಿಶ್ವವಿದ್ಯಾಲಯವು, ರಾಜ್ಯದಲ್ಲಿ ತನಗೆ ಸೂಕ್ತವೆನಿಸುವಂಥ ಸ್ಥಳಗಳಲ್ಲಿ ಘಟಕ ಕಾಲೇಜುಗಳು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದಿರಬಹುದು.

**7. ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು.–** ವಿಶ್ವವಿದ್ಯಾಲಯವು, ತನ್ನ ಭವಿಷ್ಯದ್‌ದೃಷ್ಟಿ ಮತ್ತು ಧ್ಯೇಯೋದ್ದೇಶಗಳನ್ನು ಸಾಧಿಸಲು ಈ ಮುಂದಿನಂತೆ ವಿವಿಧ ಬಗೆಯ ಕಾರ್ಯತಂತ್ರಗಳನ್ನು ಕೈಗೊಳ್ಳಬಹುದು:–

(i) ತಾಂತ್ರಿಕ ಶಿಕ್ಷಣ, ಹಣಕಾಸು, ವ್ಯವಸ್ಥಾಪನೆ, ಬೋಧನೆ ಕಲಿಕೆ, ಮುಕ್ತ ಕಲೆಗಳು, ಮಾನವಿಕಗಳು, ಕಲೆ, ವೈದ್ಯಕೀಯ, ದಂತವೈದ್ಯಕೀಯ, ಔಷಧ ಶಾಸ್ತ್ರ, ನರ್ಸಿಂಗ್, ಆರೋಗ್ಯ ಸಂಬಂಧಿಸಿದವುಗಳನ್ನು ಒಳಗೊಂಡ ಆರೋಗ್ಯ ರಕ್ಷಣೆ ಮತ್ತು ಇತರ ಸಂಬಂಧಿತ ಅಭಿವೃದ್ಧಿ ಕ್ಷೇತ್ರಗಳನ್ನು ಒಳಗೊಂಡ ಕಾನೂನು ಕ್ಷೇತ್ರಗಳಲ್ಲಿ ವಿವಿಧ ವ್ಯಾಸಂಗ ಕ್ರಮಗಳಲ್ಲಿ ಶಿಕ್ಷಣ, ಬೋಧನೆ ತರಬೇತಿ, ಸಂಶೋಧನೆ, ಸಮಾಲೋಚನೆ ಮತ್ತು ಅಭಿವೃದ್ಧಿಯನ್ನು ಕಲ್ಪಿಸುವುದು ಹಾಗೂ ಈ ಕ್ಷೇತ್ರಗಳಲ್ಲಿ ಸಂಶೋಧನೆ, ಪ್ರಗತಿ ಮತ್ತು ಜ್ಞಾನ ಪ್ರಸಾರಕ್ಕೆ ಉಪಬಂಧಗಳನ್ನು ಕಲ್ಪಿಸುವುದು;

(ii) ಉನ್ನತ ಮತ್ತು ವೃತ್ತಿ ಶಿಕ್ಷಣದಲ್ಲಿ ಬೋಧಕರಿಗಾಗಿ, ಆಡಳಿತಗಾರರಿಗಾಗಿ ಹಾಗೂ ಸರ್ಕಾರಿ, ಸಾರ್ವಜನಿಕ ಮತ್ತು ಖಾಸಗಿ ವಲಯದಲ್ಲಿ ಕೆಲಸ ಮಾಡುವ ವೃತ್ತಿನಿರತರಿಗಾಗಿ ಮತ್ತು ಇತರ ವ್ಯವಸ್ಥೆಗಳಲ್ಲಿನ ಅಭಿವೃದ್ಧಿ ವೃತ್ತಿ ನಿರತರಿಗಾಗಿ ಉನ್ನತ ಗುಣಮಟ್ಟದ ತರಬೇತಿ, ಸಾಮರ್ಥ್ಯ ವೃದ್ಧಿ ಹಾಗೂ ಬೆಳವಣಿಗೆ ವ್ಯವಸ್ಥೆಗಳನ್ನು ವಿನ್ಯಾಸಗೊಳಿಸುವುದು ಮತ್ತು ಪ್ರಚುರಪಡಿಸುವುದು ;

(iii) ಗುಣಮಟ್ಟದ ಶಿಕ್ಷಣಕ್ಕೆ ಕೊಡುಗೆಯನ್ನು ನೀಡಲು ಸಂಪನ್ಮೂಲ ಕೇಂದ್ರಗಳನ್ನು ಅಭಿವೃದ್ಧಿಪಡಿಸುವುದು;

(iv) ಕ್ಯಾಂಪಸ್‌ಗಳನ್ನು ಸ್ಥಾಪಿಸುವುದು ಮತ್ತು ಐದು ವರ್ಷಗಳ ತರುವಾಯ ಕರ್ನಾಟಕದ ಹಲವು ಸ್ಥಳಗಳಲ್ಲಿ ಅಧ್ಯಯನ ಕೇಂದ್ರಗಳು, ಘಟಕ ಕಾಲೇಜುಗಳು ಮತ್ತು ಪ್ರಾದೇಶಿಕ ಕೇಂದ್ರಗಳನ್ನು ಹೊಂದುವುದು ಹಾಗೂ ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ವಿಶ್ವವಿದ್ಯಾಲಯ ಅನುದಾನಗಳ ಆಯೋಗದ ರೂಢಿಗಳ ಅನುಸಾರವಾಗಿ ತಾಂತ್ರಿಕ ಮತ್ತು ವೃತ್ತಿ ಶಿಕ್ಷಣ ಹಾಗೂ ಸಾಮಾಜಿಕ ಮತ್ತು ಮಾನವ ಅಭಿವೃದ್ಧಿಗಳಲ್ಲಿ ಶೈಕ್ಷಣಿಕ ಬದಲಾವಣೆಗಾಗಿ ಕೊಡುಗೆ ನೀಡುವುದು ಮತ್ತು ಅದರ ಅರ್ಥೈಸುವಿಕೆಯನ್ನು ಅಭಿವೃದ್ಧಿಗೊಳಿಸುವುದು;

(v) ಮೌಲ್ಯಮಾಪನದ ವಿವಿಧ ವಿಧಾನಗಳ ಮೂಲಕ ಮಾಡಿದ ಮೌಲ್ಯಮಾಪನಕ್ಕೆ ಅನುಸಾರವಾಗಿ ಶಿಕ್ಷಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದುದರ ಆಧಾರದ ಮೇಲೆ ಪದವಿಗಳನ್ನು, ಡಿಪ್ಲೋಮೋಗಳನ್ನು, ಪ್ರಮಾಣಪತ್ರಗಳನ್ನು ಮತ್ತು ಯಶೋಪತ್ರ ಪ್ರದಾನದಂಥ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(vi) ವಿದ್ಯಾರ್ಥಿಗಳಿಗೆ, ಬೋಧಕ ವೃಂದದ (ಫ್ಯಾಕಲ್ಟಿ) ಸದಸ್ಯರಿಗೆ ಮತ್ತು ಇತರರಿಗೆ ನಿರ್ದಿಷ್ಟ ಶೈಕ್ಷಣಿಕ ಮತ್ತು ಸಂಶೋಧನಾ ಕಾರ್ಯಕ್ರಮಗಳನ್ನು, ತರಬೇತಿ ಕಾರ್ಯಕ್ರಮಗಳನ್ನು ಮತ್ತು ವಿನಿಮಯ ಕಾರ್ಯಕ್ರಮಗಳನ್ನು ಪರಿಕಲ್ಪಿಸಲು, ವಿನ್ಯಾಸಗೊಳಿಸಲು, ಅಭಿವೃದ್ಧಿಪಡಿಸಲು ಇತರ ಯಾವುದೇ ವಿಶ್ವವಿದ್ಯಾಲಯಗಳು, ಸಂಶೋಧನಾ ಸಂಸ್ಥೆಗಳು, ಲಾಭರಹಿತ ಸಂಸ್ಥೆಗಳು, ಕೈಗಾರಿಕಾ ಸಂಸ್ಥೆಗಳು, ವೃತ್ತಿಪರ ಸಂಸ್ಥೆಗಳು ಅಥವಾ ಇತರ ಸಂಸ್ಥೆಗಳೊಂದಿಗೆ ಸಹಯೋಗವನ್ನು ಹೊಂದುವುದು;

(vii) ಉಪನ್ಯಾಸ ಮಾಲಿಕೆಗಳು, ವಿಚಾರ ಸಂಕಿರಣಗಳು, ಸಮ್ಮೇಳನಗಳು, ಕಾರ್ಯಾಂಗ ಶಿಕ್ಷಣ ಕಾರ್ಯಕ್ರಮಗಳು, ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳು, ಪ್ರಕಟಣೆಗಳು ಮತ್ತು ತರಬೇತಿ ಕಾರ್ಯಕ್ರಮಗಳು ಮತ್ತು ಕಾರ್ಯಸೂಚಿಗಳ ಮೂಲಕ ಜ್ಞಾನ ಪ್ರಸಾರ ಮಾಡುವುದು ಮತ್ತು ಶಿಕ್ಷಣ ಮತ್ತು ತತ್ಸಂಬಂಧಿತ ಅಭಿವೃದ್ಧಿ ಕ್ಷೇತ್ರಗಳ ವಿಷಯಗಳ ಬಗ್ಗೆ ಸಾರ್ವಜನಿಕ ಚರ್ಚೆಯನ್ನು ಏರ್ಪಡಿಸುವುದು;

(viii) ರಾಜ್ಯ ಸರ್ಕಾರದ ಪೂರ್ವ ಅನುಮತಿಯೊಂದಿಗೆ, ಉತ್ತಮ ಗುಣಮಟ್ಟದ ಇತರ ಯಾವುವೇ ಸಂಸ್ಥೆಗಳೊಂದಿಗೆ ಸಹಭಾಗಿಗಳಾಗಿ ವಿಶ್ವವಿದ್ಯಾಲಯದ ಬೋಧಕ ವೃಂದ (ಫ್ಯಾಕಲ್ಟಿ) ಮತ್ತು ಸಂಶೋಧಕರ ಅಭಿವೃದ್ಧಿ ಮತ್ತು ತರಬೇತಿಗಾಗಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು;

(ix) ರಾಜ್ಯ ಸರ್ಕಾರದ ಪೂರ್ವ ಅನುಮೋದನೆಯೊಡನೆ, ಯಾವುದೇ ಸಂಸ್ಥೆಯೊಂದಿಗೆ ಸಹಯೋಗ ಹೊಂದಿ ಸಂಶೋಧನೆಯನ್ನು ಮತ್ತು ಹೊಸತನವನ್ನು ಬೆಳಕಿಗೆ ತರುವುದು;

(x) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದಕ್ಕಾಗಿ ಮತ್ತು ಉತ್ತೇಜಿಸುವುದಕ್ಕಾಗಿ ಅವಶ್ಯಕವಾದ ಮತ್ತು ಯುಕ್ತವಾದ ಕ್ರಮಗಳನ್ನು ಕೈಗೊಳ್ಳುವುದು;

(xi) ಶಿಕ್ಷಣ ಮತ್ತು ಇತರ ಅಭಿವೃದ್ಧಿ ವಲಯಗಳನ್ನು ವಿಸ್ತರಿಸುವುದಕ್ಕಾಗಿ ಸರ್ಕಾರವು ಅನುಮೋದಿಸಬಹುದಾದಂತೆ ಯಾವುವೇ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದು.

**8. ವಿಶ್ವವಿದ್ಯಾಲಯದ ಅಧಿಕಾರಗಳು.–** ವಿಶ್ವವಿದ್ಯಾಲಯವು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗೆ ಅನುಸಾರವಾಗಿ ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿರ್ಧರಿಸಬಹುದಾದಂತೆ ವಿಶ್ವವಿದ್ಯಾಲಯದ ಸ್ಥಾಪನೆಯ ದಿನಾಂಕದಿಂದ ಐದು ವರ್ಷಗಳ ತರುವಾಯ ಕ್ಯಾಂಪಸ್ಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಕರ್ನಾಟಕದಲ್ಲಿ ಸ್ಥಾಪಿಸುವುದು ಮತ್ತು ನಿರ್ವಹಿಸುವುದು;

(ii) ವಿಶ್ವವಿದ್ಯಾಲಯದ ಉದ್ದೇಶವನ್ನು ಕಾರ್ಯರೂಪಕ್ಕೆ ತರುವಲ್ಲಿ ಅಗತ್ಯವಾಗಬಹುದಾದ ಅಥವಾ ಕಾರ್ಯಸಾಧ್ಯವಾಗಬಹುದಾದ ಎಲ್ಲಾ ಅಂಥ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು;

(iii) ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಮತ್ತು ಷರತ್ತುಗಳಿಗೊಳಪಟ್ಟು ಪದವಿಗಳು ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರದಾನಮಾಡುವುದು;

(iv) ಪರಿನಿಯಮಗಳನುಸಾರವಾಗಿ ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿ ವೇತನಗಳು ಮತ್ತು ಬಹುಮಾನಗಳು, ಅವಾರ್ಡುಗಳು, ಪಾರಿತೋಷಕಗಳು ಇತ್ಯಾದಿಗಳನ್ನು ಸ್ಥಾಪಿಸುವುದು ಮತ್ತು ನೀಡುವುದು;

(v) ಪರಿನಿಯಮಗಳಲ್ಲಿ ಅಥವಾ ಸಂದರ್ಭಾನುಸಾರವಾಗಿ ನಿಯಮಗಳಲ್ಲಿ ನಿಗದಿಪಡಿಸಬಹುದಾದ ಅಂಥ ಶುಲ್ಕಗಳು, ಬಿಲ್ಲುಗಳು, ಖರೀದಿ ಪಟ್ಟಿಗಳನ್ನು ಕೇಳಿಪಡೆದುಕೊಳ್ಳುವುದು ಮತ್ತು ಸ್ವೀಕರಿಸುವುದು ಹಾಗೂ ಚಾರ್ಜುಗಳನ್ನು ವಸೂಲು ಮಾಡುವುದು;

(vi) ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಪಠ್ಯೇತರ ಚಟುವಟಿಕೆಗಳಿಗೆ ಉಪಬಂಧಗಳನ್ನು ಕಲ್ಪಿಸುವುದು;

(vii) ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಕ್ಯಾಂಪಸುಗಳ, ಪ್ರಾದೇಶಿಕ ಕೇಂದ್ರಗಳ, ಅಧ್ಯಯನ ಕೇಂದ್ರಗಳ ಫ್ಯಾಕಲ್ಟಿ, ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವುದು;

(viii) ವಿಶ್ವವಿದ್ಯಾಲಯದ ಅಥವಾ ಒಂದು ಘಟಕ ಕಾಲೇಜಿನ ಅಥವಾ ಕ್ಯಾಂಪಸ್ಸಿನ, ಪ್ರಾದೇಶಿಕ ಕೇಂದ್ರದ ಮತ್ತು ಅಧ್ಯಯನ ಕೇಂದ್ರದ ಉದ್ದೇಶಕ್ಕಾಗಿ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದಿರುವ, ಯಾವುದೇ ರೀತಿಯ ಸ್ವಯಂ ದೇಣಿಗೆಗಳು ಮತ್ತು ಕೊಡುಗೆಗಳನ್ನು ಸ್ವೀಕರಿಸುವುದು ಮತ್ತು ಟ್ರಸ್ಟ್ ಮತ್ತು ದತ್ತಿ ಸ್ವತ್ತುಗಳೂ ಸೇರಿದಂತೆ, ಯಾವುದೇ ಚರ ಅಥವಾ ಸ್ಥಿರ ಸ್ವತ್ತನ್ನು ಆರ್ಜಿಸುವುದು, ಹೊಂದಿರುವುದು, ನಿರ್ವಹಿಸುವುದು, ನಡೆಸುವುದು ಮತ್ತು ಹಸ್ತಾಂತರ ಮಾಡುವುದು;

(ix) ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸಿಕೊಂಡು ಬರುವುದು ಹಾಗೂ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ ವಿದ್ಯಾರ್ಥಿಗಳಿಗೆ ವಸತಿ ಸ್ಥಳಗಳನ್ನು ಗುರುತಿಸುವುದು;

(x) ವಸತಿಯ ಮೇಲ್ವಿಚಾರಣೆ ಮಾಡುವುದು ಮತ್ತು ನಿಯಂತ್ರಣ ಮಾಡುವುದು ಹಾಗೂ ವಿದ್ಯಾರ್ಥಿಗಳು ಮತ್ತು ಎಲ್ಲಾ ಪ್ರವರ್ಗಗಳ ಸಿಬ್ಬಂದಿಗಳಲ್ಲಿ ಶಿಸ್ತು ನಿಯಂತ್ರಣ ಮಾಡುವುದು ಮತ್ತು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ನಡತೆ ಸಂಹಿತೆಯನ್ನು ರೂಪಿಸುವುದೂ ಒಳಗೊಂಡಂತೆ, ಅಂಥ ಸಿಬ್ಬಂದಿಗಳ ಸೇವಾಷರತ್ತುಗಳನ್ನು ನಿರೂಪಿಸುವುದು;

(xi) ಶೈಕ್ಷಣಿಕ, ಆಡಳಿತಾತ್ಮಕ ಮತ್ತು ಬೆಂಬಲ ಸಿಬ್ಬಂದಿಯ ಹುದ್ದೆಗಳನ್ನು ಮತ್ತು ಇತರ ಅವಶ್ಯ ಹುದ್ದೆಗಳನ್ನು ಸೃಜಿಸುವುದು;

(xii) ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ಉದ್ದೇಶಗಳಿಗಾಗಿ ಇತರ ವಿಶ್ವವಿದ್ಯಾಲಯಗಳೊಡನೆ ಸಹಕರಿಸುವುದು ಮತ್ತು ಸಹಯೋಗ ಹೊಂದುವುದು;

(xiii) ಶಿಕ್ಷಕರಿಗೆ, ಪತ್ರ್ಯ ಬರಹಗಾರರಿಗೆ, ಮೌಲ್ಯಮಾಪಕರಿಗೆ ಮತ್ತಿತರ ಶೈಕ್ಷಣಿಕ ಸಿಬ್ಬಂದಿಗೆ ಪುನರ್ಮನನ ವ್ಯಾಸಂಗಕ್ರಮಗಳು, ಪರಿಚಯಾತ್ಮಕ ವ್ಯಾಸಂಗ ಕ್ರಮಗಳು, ಕಾರ್ಯಾಗಾರಗಳು, ವಿಚಾರಗೋಷ್ಠಿಗಳು ಮತ್ತಿತರ ಕಾರ್ಯಕ್ರಮಗಳನ್ನು ಏರ್ಪಡಿಸುವುದು ಮತ್ತು ನಡೆಸುವುದು;

(xiv) ಶೈಕ್ಷಣಿಕ ಪರಿಷತ್ತಿನ ಅನುಮೋದನೆಯೊಂದಿಗೆ ವಿಶ್ವವಿದ್ಯಾಲಯಕ್ಕೆ ಅಥವಾ ಘಟಕ ಕಾಲೇಜಿಗೆ, ಪ್ರಾದೇಶಿಕ ಕೇಂದ್ರಗಳಿಗೆ, ಅಧ್ಯಯನ ಕೇಂದ್ರಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮಾನಕ ಗುಣಮಟ್ಟಗಳನ್ನು ನಿರ್ಧರಿಸುವುದು ಮತ್ತು ಈ ಅಧಿನಿಯಮದಲ್ಲಿ ಕಲ್ಪಿಸಿದ ವ್ಯಾಪ್ತಿಗಿಂತ ಕಡಿಮೆಯಿಲ್ಲದಂತೆ ಕರ್ನಾಟಕದ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನೀಡುವುದು;

(xv) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಕಾರ್ಯರೂಪಕ್ಕೆ ತರಲು ಅವಶ್ಯವಾಗಬಹುದಾದಂಥ ಇತರ ಎಲ್ಲಾ ಕ್ರಮಗಳನ್ನು ಅಥವಾ ಕಾರ್ಯಗಳನ್ನು, ಅವು ಮೇಲೆ ಹೇಳಿದ ಅಧಿಕಾರಗಳಿಗೆ ಪ್ರಾಸಂಗಿಕವಾಗಿರಲಿ ಅಥವಾ ಇಲ್ಲದಿರಲಿ, ಕೈಗೊಳ್ಳುವುದು;

(xvi) ಪರೀಕ್ಷೆಗಳ ಆಧಾರದ ಮೇಲೆ ಅಥವಾ ಸರ್ಕಾರದಿಂದ ಅನುಮೋದಿತವಾದ ಇತರ ಯಾವುದೇ ಮೌಲ್ಯಮಾಪನ ವಿಧಾನದ ಆಧಾರದ ಮೇಲೆ ನೀಡಲು ಪದವಿಗಳು, ಡಿಪ್ಲೋಮಾಗಳು, ಪ್ರಮಾಣಪತ್ರಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(xvii) ಫಿಲಂಗಳು, ಕ್ಯಾಸೆಟ್‌ಗಳು, ಧ್ವನಿಸುರುಳಿಗಳು, ದೃಶ್ಯಸುರುಳಿಗಳು, ಸಿ.ಡಿ., ವಿ.ಸಿ.ಡಿ. ಪೆನ್ ಡ್ರೈವ್‌ಗಳು ಮತ್ತು ಇತರ ತಂತ್ರಾಂಶಗಳೂ ಹಾಗೂ ಇತರ ಸಂಬಂಧಿತ ವಿದ್ಯುನ್ಮಾನ ಮತ್ತು ಮುದ್ರಣ ಮಾಧ್ಯಮ ಸೇರಿದಂತೆ ಬೋಧಕ ಸಾಮಗ್ರಿಗಳನ್ನು ತಯಾರಿಸುವುದಕ್ಕಾಗಿ ಅವಕಾಶ ಕಲ್ಪಿಸುವುದು;

(xviii) ಪ್ರಬಂಧಕ ಮಂಡಳಿಯ ಅನುಮೋದನೆಯೊಡನೆ ವಿಶ್ವವಿದ್ಯಾಲಯದ ಉದ್ದೇಶಗಳಿಗಾಗಿ ವಿಶ್ವವಿದ್ಯಾಲಯದ ಸ್ವತ್ತುಗಳನ್ನು ಭದ್ರತೆಯಾಗಿ ನೀಡಿ ಅಥವಾ ನೀಡದೆ ಹಣವನ್ನು ಪಡೆಯುವುದು, ಸಂಗ್ರಹಿಸುವುದು, ಚಂದಾದಾರರಾಗುವುದು ಮತ್ತು ಸಾಲ ಪಡೆಯುವುದು;

(xix) ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುದೇ ಇತರ ಶೈಕ್ಷಣಿಕ ಸಂಸ್ಥೆಗಳ ಆಡಳಿತವನ್ನು ವಶಪಡಿಸಿಕೊಳ್ಳುವುದು ಮತ್ತು ತೆಗೆದುಕೊಳ್ಳುವುದು ಹಾಗೂ ನಡೆಸುವುದು ;

(xx) ವ್ಯವಸ್ಥಾಪನಾ ಮಂಡಳಿ ಪೂರ್ವಾನುಮೋದನೆಯೊಂದಿಗೆ ಸ್ವತ್ತುಗಳನ್ನು ಆರ್ಜಿಸುವುದು;

(xxi) ವಿಶ್ವವಿದ್ಯಾಲಯದ ಮೇಲಿನ ಉದ್ದೇಶಗಳಿಗೆ ಸಂಬಂಧಿಸಿದ ಅಥವಾ ಪ್ರಾಸಂಗಿಕವಾದ ಯಾವುದೇ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು.

**9. ವಿಶ್ವವಿದ್ಯಾಲಯವು ಎಲ್ಲಾ ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರದ ಎಲ್ಲರಿಗೂ ಮುಕ್ತವಾಗಿರತಕ್ಕದ್ದು.–** ವಿಶ್ವವಿದ್ಯಾಲಯದ ಪ್ರವೇಶಗಳು ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರದ ಎಲ್ಲಾ ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು. ಎಲ್ಲಾ ಪ್ರವೇಶಗಳನ್ನು ಅರ್ಹತಾ ಪರೀಕ್ಷೆಗಳಲ್ಲಿನ ಅರ್ಹತೆಯ ಆಧಾರದ ಮೇಲೆ ಮಾಡತಕ್ಕದ್ದು:

ಪರಂತು, ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳ ಪ್ರವೇಶದಲ್ಲಿ ಶೇಕಡಾ ನಲವತ್ತರಷ್ಟನ್ನು ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ಮೀಸಲಿಡತಕ್ಕದ್ದು ಮತ್ತು ಪ್ರವೇಶಗಳನ್ನು ರಾಜ್ಯ ಸರ್ಕಾರವು ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡತಕ್ಕದ್ದು ಮತ್ತು ಸೀಟುಗಳನ್ನು ಅರ್ಹತೆ ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ರೂಪಿಸುವ ಮೀಸಲಾತಿ ನೀತಿಗೆ ಅನುಸಾರವಾಗಿ ಹಂಚಿಕೆ ಮಾಡತಕ್ಕದ್ದು:

ಮತ್ತು ಪರಂತು, ಯಾವುದೇ ಕೋರ್ಸಿನಲ್ಲಿ ಹತ್ತಕ್ಕಿಂತ ಕಡಿಮೆ ಸೀಟುಗಳು ಇರುವಲ್ಲಿ, ಸ್ನಾತಕೋತ್ತರ, ಪಿಹೆಚ್‌ಡಿ ಮತ್ತು ಸಂಶೋಧನೆ ಇಂಥ ಕೋರ್ಸುಗಳನ್ನು ಒಟ್ಟಿಗೆ ಒಂದುಗೂಡಿಸುವ ಮೂಲಕ ಮೀಸಲಿಡತಕ್ಕದ್ದು ಮತ್ತು ಯಾವುದೇ ಕೋರ್ಸಿನಲ್ಲಿ ಮೂರು ಸೀಟುಗಳಿಗಿಂತ ಕಡಿಮೆ ಇರುವಲ್ಲಿ, ಅವುಗಳನ್ನು ಸರದಿ ಸುತ್ತಿನಲ್ಲಿ ಮೀಸಲಿಡತಕ್ಕದ್ದು.

**10. ರಾಷ್ಟ್ರೀಯ ಅಧಿಮಾನ್ಯತೆ.–** ವಿಶ್ವವಿದ್ಯಾಲಯವು ಪ್ರಾರಂಭವಾದ ತರುವಾಯ ಆದಷ್ಟು ಬೇಗನೆ ಸಂಬಂಧಪಟ್ಟ ಶಾಸನಾತ್ಮಕ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳಿಂದ ಅಧಿಮಾನ್ಯತೆಯನ್ನು ಕೋರತಕ್ಕದ್ದು ಮತ್ತು ಖಾಸಗಿ ವಿಶ್ವವಿದ್ಯಾಲಯಗಳು ನಡೆಸುವ ಎಲ್ಲಾ ವ್ಯಾಸಂಗ ಕ್ರಮಗಳು ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ವಿನಿಯಮಗಳಿಗೆ ಅನುಸಾರವಾಗಿ ಇರತಕ್ಕದ್ದು.

**11. ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು.–** ಪ್ರಾಯೋಜಕ ಸಂಸ್ಥೆಯು ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದಂತೆ ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಇವುಗಳಲ್ಲಿ ಪ್ರತಿಯೊಂದನ್ನು ಪ್ರಾಯೋಜಕ ಸಂಸ್ಥೆಯು ತನ್ನ ವಿವೇಚನಾನುಸಾರ ಚಲಾಯಿಸಬಹುದು, ಎಂದರೆ:–

(i) ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಪುನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(ii) ವಿಶ್ವವಿದ್ಯಾಲಯದ ಪ್ರಥಮ ಪ್ರಬಂಧಕ ಮಂಡಳಿಯನ್ನು ರಚಿಸುವುದು;

(iii) ಪ್ರಬಂಧಕ ಮಂಡಳಿಯ ಅಧ್ಯಕ್ಷರನ್ನು ನಾಮನಿರ್ದೇಶಿಸುವುದು;

(iv) ಪ್ರಬಂಧಕ ಮಂಡಳಿಯ ಸದಸ್ಯರಾಗಿ ಮೂರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(v) ವ್ಯವಸ್ಥಾಪನಾ ಮಂಡಳಿ ಸದಸ್ಯರಾಗಿ ಇಬ್ಬರು ವ್ಯಕ್ತಿಗಳನ್ನು ನಾಮ ನಿರ್ದೇಶಿಸುವುದು;

(vi) ವಿಶ್ವವಿದ್ಯಾಲಯದ ದತ್ತಿ ನಿಧಿಗೆ ದೇಣಿಗೆ ನೀಡಲು ನಿಧಿ ಮೂಲಗಳನ್ನು ನಿರ್ಧರಿಸುವುದು;

(vii) ವಿಶ್ವವಿದ್ಯಾಲಯದ ಹಣದ ವಿನಿಯೋಗ ಮತ್ತು ವೆಚ್ಚ ಮಾಡುವುದನ್ನು ನಿರ್ಧರಿಸುವುದು;

(viii) ಈ ಅಧಿನಿಯಮದಲ್ಲಿ ಉಪಬಂಧಿಸಿರುವ ವಿಧಾನದಲ್ಲಿ ಪ್ರಬಂಧಕ ಮಂಡಳಿಯ ಸಭೆಯಲ್ಲಿಯ ವಿವಾದಗಳನ್ನು ಬಗೆಹರಿಸುವುದು.

## ಅಧ್ಯಾಯ – III
## ವಿಶ್ವವಿದ್ಯಾಲಯದ ಅಧಿಕಾರಿಗಳು

**12. ವಿಶ್ವವಿದ್ಯಾಲಯದ ಅಧಿಕಾರಿಗಳು.–** ಈ ಮುಂದಿನವರು ವಿಶ್ವವಿದ್ಯಾಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:–

(i) ಸಂದರ್ಶಕರು;

(ii) ಸಹ–ಸಂದರ್ಶಕರು;

(iii) ಕುಲಾಧಿಪತಿಗಳು;

(iv) ಸಹ–ಕುಲಾಧಿಪತಿಗಳು;

(v) ಕುಲಪತಿಗಳು;

(vi) ಸಹಕುಲಪತಿಗಳು;

(vii) ವ್ಯಾಸಂಗ ವಿಭಾಗದ ಡೀನ್‌ಗಳು;

(viii) ಕುಲಸಚಿವರು;

(ix) ಹಣಕಾಸು ಅಧಿಕಾರಿ; ಮತ್ತು

(x) ಪರಿನಿಯಮಗಳ ಮೂಲಕ ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಘೋಷಿಸಬಹುದಾದಂಥ ಇತರ ಅಧಿಕಾರಿಗಳು.

**13. ಸಂದರ್ಶಕರು.**– (1) ಕರ್ನಾಟಕದ ಘನತೆವೆತ್ತ ರಾಜ್ಯಪಾಲರು ವಿಶ್ವವಿದ್ಯಾಲಯದ ಸಂದರ್ಶಕರಾಗಿರತಕ್ಕದ್ದು ಮತ್ತು ಸಂದರ್ಶಕರು ವಿಶ್ವವಿದ್ಯಾಲಯದ ಕಾರ್ಯನಿರ್ವಹಣೆಯ ಸುಧಾರಣೆಗಾಗಿ ಸಲಹೆಗಳನ್ನು ನೀಡಬಹುದು.

(2) ಸಂದರ್ಶಕರು, ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಸಂದರ್ಶಕರು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ವ್ಯವಹಾರಗಳಿಗೆ ಸಂಬಂಧಿಸಿದಂತೆ, ಯಾವುದೇ ಪತ್ರ ಅಥವಾ ಮಾಹಿತಿಯನ್ನು ತರಿಸಿಕೊಳ್ಳುವುದು.

(ii) ಸಂದರ್ಶಕರು, ಅವರು ಸ್ವೀಕರಿಸಿದ ಮಾಹಿತಿಯ ಆಧಾರದ ಮೇಲೆ ವಿಶ್ವವಿದ್ಯಾಲಯಗಳ ಯಾವುದೇ ಪ್ರಾಧಿಕಾರವು ಮಾಡಿದ ಯಾವುದೇ ಆದೇಶ, ನಡೆಸಿದ ವ್ಯವಹರಣೆಗಳು ಅಥವಾ ಕೈಗೊಂಡ ತೀರ್ಮಾನಗಳು, ಈ ಅಧಿನಿಯಮ, ವಿನಿಯಮಗಳು ಅಥವಾ ನಿಯಮಗಳಿಗೆ ಪೂರಕವಾಗಿಲ್ಲವೆಂದು ಮನಗಂಡರೆ ಅವರು ವಿಶ್ವವಿದ್ಯಾಲಯದ ಹಿತಾಸಕ್ತಿಯಿಂದ ತಾವು ಸೂಕ್ತವೆಂದು ಭಾವಿಸಬಹುದಾದಂಥ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಹಾಗೆ ಹೊರಡಿಸಿದ ನಿರ್ದೇಶನಗಳನ್ನು ಸಂಬಂಧಪಟ್ಟವರೆಲ್ಲರೂ ಪಾಲಿಸತಕ್ಕದ್ದು.

**14. ಸಹ–ಸಂದರ್ಶಕರು.**– (1) ಕರ್ನಾಟಕ ಸರ್ಕಾರದ ಮಾನ್ಯ ಉನ್ನತ ಶಿಕ್ಷಣ ಮಂತ್ರಿಗಳು ವಿಶ್ವವಿದ್ಯಾಲಯದ ಸಹ–ಸಂದರ್ಶಕರಾಗಿರತಕ್ಕದ್ದು.

(2) ಸಂದರ್ಶಕರ ಅನುಪಸ್ಥಿತಿಯಲ್ಲಿ ಸಹ–ಸಂದರ್ಶಕರು ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**15. ಕುಲಾಧಿಪತಿಗಳು.**– (1) ಕುಲಾಧಿಪತಿಯವರನ್ನು ಪ್ರಾಯೋಜಕ ಸಂಸ್ಥೆಯು ನೇಮಿಸತಕ್ಕದ್ದು.

(2) ಪ್ರಾಯೋಜಕ ಸಂಸ್ಥೆಯ ಟ್ರಸ್ಟಿಯು ಮೊದಲನೇ ಕುಲಾಧಿಪತಿಗಳಾಗಿರತಕ್ಕದ್ದು, ಅವರು ತಮ್ಮ ಜೀವನಪರ್ಯಂತ ಅಥವಾ ಅವರು ತಮ್ಮ ಪದವನ್ನು ಬಿಟ್ಟುಕೊಡುವವರೆಗೆ ಕುಲಾಧಿಪತಿಗಳಾಗಿ ಪದಧಾರಣ ಮಾಡಿರತಕ್ಕದ್ದು.

(3) ತದನಂತರದ ಕುಲಾಧಿಪತಿಗಳು, ಪ್ರಾಯೋಜಕ ಸಂಸ್ಥೆಯ ಟ್ರಸ್ಟಿಯಾಗಿರತಕ್ಕದ್ದು.

(4) ಪ್ರಾಯೋಜಕ ಸಂಸ್ಥೆಯು ಸಹ–ಕುಲಾಧಿಪತಿಯನ್ನು ನೇಮಿಸಬಹುದು ಅವರು ಪ್ರಾಯೋಜಕ ಸಂಸ್ಥೆಯ ಟ್ರಸ್ಟಿಯಾಗಿರತಕ್ಕದ್ದು.

(5) ಹಾಗೆ ನೇಮಕಗೊಂಡ ತದನಂತರದ ಕುಲಾಧಿಪತಿಗಳು ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ಪದಧಾರಣ ಮಾಡತಕ್ಕದ್ದು.

(6) ಕುಲಾಧಿಪತಿಗಳು ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳ ಅಡಿಯಲ್ಲಿ ಅವರಿಗೆ ಪ್ರದಾನ ಮಾಡಬಹುದಾದಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು, ಅವುಗಳಲ್ಲಿ ಈ ಮುಂದಿನ ಅಧಿಕಾರಗಳು ಒಳಗೊಂಡಿರತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುವುದು;

(ii) ಸಂದರ್ಶಕರ ಮತ್ತು ಸಹ–ಸಂದರ್ಶಕರಿಬ್ಬರ ಗೈರುಹಾಜರಿಯಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಘಟಿಕೋತ್ಸವಗಳಲ್ಲಿ ಅಧ್ಯಕ್ಷತೆಯನ್ನು ವಹಿಸುವುದು;

(iii) ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವುದು;

(iv) ಈ ಅಧಿನಿಯಮ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಅನುಸಾರವಾಗಿ ಸಹ–ಕುಲಾಧಿಪತಿಗಳು, ಕುಲಪತಿಗಳನ್ನು ನೇಮಿಸುವುದು ಅಥವಾ ಪುನರ್ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(v) ಈ ಅಧಿನಿಯಮದ 16ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ನಾಮನಿರ್ದೇಶಕ ಸಮಿತಿಯ ಸದಸ್ಯರಾಗಿ ಒಬ್ಬ ವ್ಯಕ್ತಿಯನ್ನು ನಾಮನಿರ್ದೇಶನ ಮಾಡುವುದು;

(vi) ಸಹಕುಲಪತಿಗಳು, ಡೀನ್, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿಗಳ ನೇಮಕಾತಿಯನ್ನು ಪೂರ್ವಾನುಮೋದಿಸುವುದು;

(vii) ಪ್ರಬಂಧಕ ಮಂಡಳಿಯ ಸದಸ್ಯರನ್ನಾಗಿ ಇಬ್ಬರು ಶಿಕ್ಷಣ ತಜ್ಞರನ್ನು ನಾಮನಿರ್ದೇಶಿಸುವುದು;

(viii) ಮೊದಲ ಸಹಕುಲಪತಿಗಳನ್ನು ಹಾಗೂ ಹಣಕಾಸು ಅಧಿಕಾರಿಯನ್ನು ನೇಮಿಸುವುದು;

(ix) ಮೊದಲ ವ್ಯವಸ್ಥಾಪನಾ ಮಂಡಳಿ, ಹಣಕಾಸು ಸಮಿತಿ, ಸಂಶೋಧನಾ ಪರಿಷತ್ತು ಹಾಗೂ ಶೈಕ್ಷಣಿಕ ಪರಿಷತ್ತುಗಳನ್ನು ರಚಿಸುವುದು;

(x) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ ಕಾರ್ಯಸೂಚಿ ವಿಷಯಗಳನ್ನು ಪೂರ್ವಾನುಮೋದಿಸುವುದು;

(xi) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ (ಪ್ರಬಂಧಕ ಮಂಡಳಿಯ ಸಭೆಯಲ್ಲಿ ಉಂಟಾದ ವಿವಾದಗಳನ್ನು ಹೊರತುಪಡಿಸಿ) ವಿವಾದಗಳನ್ನು ಪರಿಹರಿಸುವುದು.

(6) ಪದಾಧಿಕಾರಿ ಅಥವಾ ಸಂಸ್ಥೆ ಮತ್ತು ವಿಶ್ವವಿದ್ಯಾಲಯದ ಯಾವುದೇ ಇತರ ಪದಾಧಿಕಾರಿ ಅಥವಾ ಸಂಸ್ಥೆಯ ನಡುವೆ ವಿವಾದಗಳು ಉಂಟಾದಲ್ಲಿ, ಆ ವಿವಾದವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿವಾದದ ಸಂಬಂಧದಲ್ಲಿ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**16. ಸಹ-ಕುಲಾಧಿಪತಿಗಳು.-** (1) ಪರಿನಿಯಮಗಳಲ್ಲಿ ಹೇಳಬಹುದಾದ ಅಂಥ ಇತರ ನಿಬಂಧನೆಗಳು ಮತ್ತು ಷರತ್ತುಗಳಿಗೆ ಒಳಪಟ್ಟು ಪ್ರಾಯೋಜಕ ಸಂಸ್ಥೆಯು ನಿಯಮಿಸಿದ ಅವಧಿಗಾಗಿ, ಪ್ರಾಯೋಜಕ ಸಂಸ್ಥೆಯು ಸಹ-ಕುಲಾಧಿಪತಿಗಳನ್ನು ನೇಮಕ ಮಾಡತಕ್ಕದ್ದು.

(2) ಸಹ-ಕುಲಾಧಿಪತಿಯು, ಕುಲಾಧಿಪತಿಯ ಗೈರುಹಾಜರಿಯಲ್ಲಿ ಆತನ ಎಲ್ಲಾ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಕುಲಾಧಿಪತಿಯ ಲಿಖಿತ ಅನುಮೋದನೆಯೊಂದಿಗೆ ಆತನಿಗೆ ಯಾವುದೇ ಹೆಚ್ಚುವರಿ ಕರ್ತವ್ಯಗಳನ್ನು ವಹಿಸತಕ್ಕದ್ದು.

(3) ಸಹ-ಕುಲಾಧಿಪತಿಯು, ಕುಲಾಧಿಪತಿಯ ಗೈರು ಹಾಜರಿಯಲ್ಲಿ ಎಲ್ಲಾ ಸಮಿತಿಗಳು, ಸಭೆಗಳು ಮತ್ತು ಘಟಿಕೋತ್ಸವದ ಅಧ್ಯಕ್ಷತೆ ವಹಿಸತಕ್ಕದ್ದು.

**17. ಕುಲಪತಿಗಳು.-** (1) (2)ನೇ ಉಪಪ್ರಕರಣದ ಉಪಬಂಧಗಳಿಗೆ ಅನುಸಾರವಾಗಿ ನಾಮನಿರ್ದೇಶಕ ಸಮಿತಿಯು ಶಿಫಾರಸ್ಸು ಮಾಡಿದ ಮೂರು ವ್ಯಕ್ತಿಗಳ ಪೈಕಿಯಿಂದ ಒಬ್ಬರನ್ನು ಮೂರು ವರ್ಷಗಳ ಅವಧಿಗಾಗಿ ಕುಲಪತಿಗಳನ್ನಾಗಿ, ಪರಿನಿಯಮಗಳಲ್ಲಿ ನಿಯಮಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರು ನೇಮಿಸತಕ್ಕದ್ದು. ಮೂರು ವರ್ಷಗಳ ಅವಧಿಯು ಮುಗಿದ ತರುವಾಯ, ಇದನ್ನು ಮೂರು ವರ್ಷಗಳ ಮತ್ತೊಂದು ಅವಧಿಗೆ ನವೀಕರಿಸಬಹುದು:

ಪರಂತು, ಕುಲಪತಿಯವರು, ತಮ್ಮ ಅವಧಿ ಮುಗಿದ ನಂತರವೂ ಹೊಸ ಕುಲಪತಿಯವರು ಸೇರಿಕೊಳ್ಳುವವರೆಗೆ ಪದದಲ್ಲಿ ಮುಂದುವರೆಯತಕ್ಕದ್ದು. ಆದಾಗ್ಯೂ ಈ ಅವಧಿಯು ಯಾವುದೇ ಸಂದರ್ಭದಲ್ಲಿ ಒಂದು ವರ್ಷವನ್ನು ಮೀರತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಹೇಳಿರುವ ನಾಮನಿರ್ದೇಶಕ ಸಮಿತಿಯಲ್ಲಿ ಈ ಮುಂದಿನ ವ್ಯಕ್ತಿಗಳು ಇರತಕ್ಕದ್ದು, ಎಂದರೆ:-

(i) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಒಬ್ಬ ವ್ಯಕ್ತಿ;

(ii) ಪ್ರಬಂಧಕ ಮಂಡಳಿಯ ಇಬ್ಬರು ನಾಮ ನಿರ್ದೇಶಿತರು, ಇವರಲ್ಲಿ ಒಬ್ಬರನ್ನು ಪ್ರಬಂಧಕ ಮಂಡಳಿಯ ಸಮಿತಿಯ ಸಂಚಾಲಕರೆಂದು ನಾಮನಿರ್ದೇಶಿಸತಕ್ಕದ್ದು.

(3) ನಾಮನಿರ್ದೇಶನ ಸಮಿತಿಯು, ಅರ್ಹತೆಯ ಆಧಾರದ ಮೇಲೆ ಕುಲಪತಿಯ ಹುದ್ದೆಗೆ ಸೂಕ್ತವಾದ ಮೂರು ವ್ಯಕ್ತಿಗಳ ಹೆಸರನ್ನು ಶಿಫಾರಸ್ಸು ಮಾಡತಕ್ಕದ್ದು ಮತ್ತು ಅದನ್ನು ಪ್ರತಿಯೊಬ್ಬ ವ್ಯಕ್ತಿಯ ವಿದ್ಯಾರ್ಹತೆ ಮತ್ತಿತರ ವಿಶಿಷ್ಟ ಪ್ರಶಸ್ತಿಗಳನ್ನು ತಿಳಿಸುವ ಒಂದು ಸಂಕ್ಷಿಪ್ತ ವರದಿಯೊಂದಿಗೆ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು.

(4) ಕುಲಪತಿಯವರು ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಾಹಕ ಮತ್ತು ಶೈಕ್ಷಣಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣವನ್ನು ಚಲಾಯಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯದ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೊಳಿಸತಕ್ಕದ್ದು:

ಪರಂತು, ಶಿಕ್ಷಕರ ನೇಮಕಾತಿಯನ್ನು ಹೊರತುಪಡಿಸಿ ಕೂಡಲೇ ಕ್ರಮವನ್ನು ಕೈಗೊಳ್ಳಬೇಕಾದ ತುರ್ತು ಸ್ವರೂಪದ ಯಾವುದೇ ಇತರ ವಿಷಯಗಳಲ್ಲಿ ಮತ್ತು ಅದನ್ನು ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ವಿಶ್ವವಿದ್ಯಾಲಯವು ಇದಕ್ಕಾಗಿ ಅಧಿಕೃತಗೊಳಿಸಿದ್ದ ಯಾವೊಬ್ಬ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ಇತರ ಸಂಸ್ಥೆಯು ಕೂಡಲೇ ಕ್ರಮಕೈಗೊಳ್ಳುವುದು ಸಾಧ್ಯವಿರದಿರುವಾಗ ಕುಲಪತಿಯವರು ತಾನು ಸೂಕ್ತವೆಂದು ಭಾವಿಸಬಹುದಾದಂಥ ಕ್ರಮವನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆದು ಕೈಗೊಳ್ಳತಕ್ಕದ್ದು.

(5) ಕುಲಪತಿಯವರು ಪರಿನಿಯಮಗಳು ಅಥವಾ ನಿಯಮಗಳಲ್ಲಿ ಹೇಳಲಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು:

ಪರಂತು, ಕುಲಪತಿಗಳ ಅಭಿಪ್ರಾಯದಲ್ಲಿ, ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಯಾವುದೇ ನಿರ್ಣಯವು, ಈ ಅಧಿನಿಯಮ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳು, ವಿನಿಯಮಗಳು ಅಥವಾ ನಿಯಮಗಳ ಮೂಲಕ ಪ್ರದತ್ತವಾದ ಅಧಿಕಾರದ ಹೊರಗಿದ್ದರೆ ಅಥವಾ ವಿಶ್ವವಿದ್ಯಾಲಯದ ಹಿತಾಸಕ್ತಿಗೆ ಪ್ರತಿಕೂಲವಾಗಬಹುದಾಗಿದ್ದರೆ, ಅದರ ನಿರ್ಣಯದ ದಿನಾಂಕದಿಂದ ಹದಿನೈದು ದಿನಗಳ ಒಳಗೆ ತನ್ನ ನಿರ್ಣಯವನ್ನು ಪರಿಷ್ಕರಿಸಲು ಸಂಬಂಧಪಟ್ಟ ಪ್ರಾಧಿಕಾರವನ್ನು ಆತನು ಕೋರತಕ್ಕದ್ದು ಮತ್ತು ಪ್ರಾಧಿಕಾರವು ಅಂಥ ನಿರ್ಣಯವನ್ನು ಸಂಪೂರ್ಣವಾಗಿ ಅಥವಾ ಭಾಗಶಃವಾಗಿ ಪರಿಷ್ಕರಿಸಲು ನಿರಾಕರಿಸಿದ ಸಂದರ್ಭದಲ್ಲಿ ಅಥವಾ ಹದಿನೈದು ದಿನಗಳೊಳಗೆ ಯಾವುದೇ ನಿರ್ಣಯವನ್ನು ತೆಗೆದುಕೊಳ್ಳಲು ವಿಫಲವಾದಲ್ಲಿ, ನಂತರ ಅಂಥ ವಿಷಯವನ್ನು ಕುಲಾಧಿಪತಿಗಳಿಗೆ ಕಳುಹಿಸತಕ್ಕದ್ದು ಮತ್ತು ಈ ಬಗ್ಗೆ ಇವರ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

(6) ಕುಲಪತಿಯವರ ಸೇವೆಗಳನ್ನು, ಪ್ರಬಂಧಕ ಮಂಡಳಿಯ ಅನುಮೋದನೆಯೊಂದಿಗೆ ಮತ್ತು ಸಹಜ ನ್ಯಾಯದ ತತ್ವಗಳನ್ನು ಅನುಸರಿಸಿದ ನಂತರ ಹಾಗೂ ಶಿಸ್ತಿನ ಆಧಾರದ ಮೇಲೆ ಅಂತ್ಯಗೊಳಿಸುವ ಸಂದರ್ಭವೂ ಸೇರಿದಂತೆ, ಪ್ರಕರಣದ ಬಗ್ಗೆ ಕುಲಪತಿಯು ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡಿದ ತರುವಾಯ, ಕುಲಾಧಿಪತಿಯವರು ಅಂತ್ಯಗೊಳಿಸಬಹುದು.

(7) ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಸಂದರ್ಶಕರು, ಸಹ–ಸಂದರ್ಶಕರು, ಕುಲಾಧಿಪತಿಯವರು ಮತ್ತು ಸಹ–ಕುಲಾಧಿಪತಿಯವರು ಇವರುಗಳ ಗೈರು ಹಾಜರಿಯ ಸಂದರ್ಭದಲ್ಲಿ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**18. ಸಹಕುಲಪತಿಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಮೂರು ಜನರನ್ನು ಮೀರದಂತೆ ಸಹಕುಲಪತಿಗಳನ್ನು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**19. ವ್ಯಾಸಂಗ ವಿಭಾಗಗಳ ಡೀನ್‌ಗಳು.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಪರಿನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವ್ಯಾಸಂಗ ವಿಭಾಗಗಳ ಡೀನ್‌ಗಳನ್ನು ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**20. ಕುಲಸಚಿವರು.–** (1) ಕುಲಾಧಿಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಸಚಿವರನ್ನು ನೇಮಕ ಮಾಡತಕ್ಕದ್ದು.

(2) ಪರಿನಿಯಮಗಳಲ್ಲಿ ಪರಿಭಾಷಿಸಿರುವಂಥ ಎಲ್ಲಾ ಕರಾರುಗಳನ್ನು ವಿಶ್ವವಿದ್ಯಾಲಯದ ಪರವಾಗಿ ಕುಲಸಚಿವರು ಮಾಡಿಕೊಳ್ಳತಕ್ಕದ್ದು ಮತ್ತು ಅದಕ್ಕೆ ಸಹಿ ಹಾಕತಕ್ಕದ್ದು.

(3) ಕುಲಸಚಿವರು ವಿಶ್ವವಿದ್ಯಾಲಯದ ಪರವಾಗಿ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಪರಿನಿಯಮಗಳಿಂದ ಪ್ರದತ್ತಗೊಳಿಸಬಹುದಾದಂಥ ಅಥವಾ ಕುಲಾಧಿಪತಿಯವರು, ಅಥವಾ ಕುಲಪತಿಯವರು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು ವಿಶ್ವವಿದ್ಯಾಲಯದ ದಾಖಲೆಗಳು ಮತ್ತು ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು, ಕುಲಪತಿಯವರು ಅಥವಾ ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಅಂಥ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿತಕ್ಕದ್ದು.

**21. ಹಣಕಾಸು ಅಧಿಕಾರಿ.–** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಹಣಕಾಸು ಅಧಿಕಾರಿಯನ್ನು ನೇಮಕ ಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**22. ಇತರ ಅಧಿಕಾರಿಗಳು.–** ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ ನೇಮಕಾತಿಯ ವಿಧಾನ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಕರ್ತವ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ – IV
## ವಿಶ್ವವಿದ್ಯಾಲಯದ ಪ್ರಾಧಿಕಾರಗಳು

**23. ವಿಶ್ವವಿದ್ಯಾಲಯದ ಪ್ರಾಧಿಕಾರಗಳು.–** ಈ ಮುಂದಿನವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:–

(i) ಪ್ರಬಂಧಕ ಮಂಡಳಿ;

(ii) ವ್ಯವಸ್ಥಾಪನಾ ಮಂಡಳಿ;

(iii) ಶೈಕ್ಷಣಿಕ ಪರಿಷತ್ತು;

(iv) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು;

(v) ಹಣಕಾಸು ಸಮಿತಿ; ಮತ್ತು

(vi) ವಿಶ್ವವಿದ್ಯಾಲಯದ ಪ್ರಾಧಿಕಾರಗಳೆಂದು ಪರಿನಿಯಮಗಳ ಮೂಲಕ ಘೋಷಿಸಬಹುದಾದ ಅಂಥ ಇತರ ಪ್ರಾಧಿಕಾರಗಳು.

**24. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು.–**(1) ಪ್ರಬಂಧಕ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು – ಅಧ್ಯಕ್ಷರು;

(ii) ಸಹ–ಕುಲಾಧಿಪತಿಯವರು – ಸದಸ್ಯರು;

(iii) ಕುಲಪತಿಯವರು – ಸದಸ್ಯರು;

(iv) ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಅಥವಾ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(v) ಸರ್ಕಾರದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿಗಳು, ವೈದ್ಯಕೀಯ ಶಿಕ್ಷಣ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ;

(vi) ರಾಜ್ಯ ಸರ್ಕಾರವು ನಾಮ ನಿರ್ದೇಶನ ಮಾಡಿದ ಆಡಳಿತವನ್ನು ಒಳಗೊಂಡಂತೆ ವ್ಯವಸ್ಥಾಪನೆ, ಹಣಕಾಸು ಅಥವಾ ಯಾವುದೇ ಇತರ ವಿಶೇಷ ಕ್ಷೇತ್ರದಲ್ಲಿನ ಒಬ್ಬರು ತಜ್ಞರು;

(vii) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಮೂವರು ವ್ಯಕ್ತಿಗಳು ಅವರ ಪೈಕಿ ಒಬ್ಬರು ಮಹಿಳೆಯಾಗಿರತಕ್ಕದ್ದು;

(viii) ಸಹ ಕುಲಪತಿಯವರು ಮತದಾನದ ಹಕ್ಕಿಲ್ಲದ ಸದಸ್ಯರಾಗಿರತಕ್ಕದ್ದು;

(ix) ವಿಶ್ವವಿದ್ಯಾಲಯ ಅನುದಾನ ಆಯೋಗದ ನಾಮನಿರ್ದೇಶಿತ ಒಬ್ಬ ಸುಪ್ರಸಿದ್ಧ ಶಿಕ್ಷಣ ತಜ್ಞರು.

(2) ಕುಲಸಚಿವರು ಪ್ರಬಂಧಕ ಮಂಡಳಿಯ ಮತದಾನದ ಹಕ್ಕಿರದ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ಪ್ರಬಂಧಕ ಮಂಡಳಿಯ ಸದಸ್ಯರ ಪದಾವಧಿ, ಸರ್ಕಾರದಿಂದ ನಾಮನಿರ್ದೇಶಿತರಾದ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ನೇಮಕಾತಿ, ನವೀಕರಣ ಮತ್ತು ತೆಗೆದುಹಾಕುವುದು ಮುಂತಾದವುಗಳು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಾಧಿಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರ ಗೈರುಹಾಜರಿಯಲ್ಲಿ ಕುಲಾಧಿಪತಿಯವರಿಂದ ನಾಮನಿರ್ದೇಶಿತರಾದ ಯಾರಾದರೂ ಒಬ್ಬರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು. ಅಂಥ ಸಭೆಯ ಅಧ್ಯಕ್ಷತೆಯನ್ನು ವಹಿಸುವುದಕ್ಕೆ ಕುಲಾಧಿಪತಿಯವರು ಯಾವೊಬ್ಬ ವ್ಯಕ್ತಿಯನ್ನೂ ನಾಮನಿರ್ದೇಶನ ಮಾಡಿರದಿದ್ದಲ್ಲಿ, ಸಭೆಯಲ್ಲಿ ಹಾಜರಿರುವ ಸದಸ್ಯರು ಸರಳ ಬಹುಮತದ ಮೂಲಕ ಅವರುಗಳ ಪೈಕಿಯಿಂದಲೇ ಆ ಸಭೆಗೆ ಮಾತ್ರವೇ ಅಧ್ಯಕ್ಷನನ್ನು ಚುನಾಯಿಸತಕ್ಕದ್ದು.

(5) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಿಗೆ, ಅಂಥ ಸಭೆಯಲ್ಲಿ ಹಾಜರಾಗುವ ಮತ್ತು ಮತದಾನ ನೀಡುವ ಮೂರು ಜನ ಸದಸ್ಯರು ಕೋರಂ ಆಗಿರತಕ್ಕದ್ದು:

ಪರಂತು, ಪ್ರಬಂಧಕ ಮಂಡಳಿಯ ಯಾವುದೇ ಸಭೆಯ ಕೋರಂ ಪೂರ್ಣವಾಗಬೇಕಾದರೆ ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಿರುವುದು ಮತ್ತು ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ನಾಮನಿರ್ದೇಶಿತರು ಹಾಜರಾಗದೇ ಇದ್ದಾಗ ಕುಲಪತಿಯವರು ಹಾಜರಿರುವುದು ಯಾವಾಗಲೂ ಅವಶ್ಯವಾಗಿರತಕ್ಕದ್ದು.

(6) ಪ್ರಬಂಧಕ ಮಂಡಳಿಯು ವಿಶ್ವವಿದ್ಯಾಲಯದ ಪ್ರಧಾನ ಪ್ರಬಂಧಕ ಸಂಸ್ಥೆಯಾಗಿರತಕ್ಕದ್ದು ಮತ್ತು ಅದು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಕಗೊಳಿಸುವುದು;

(ii) ವಿಶ್ವವಿದ್ಯಾಲಯವು ಅನುಸರಿಸಬೇಕಾದ ಕಾರ್ಯನೀತಿಗಳನ್ನು ರಚಿಸುವುದು;

(iii) ಈ ಅಧಿನಿಯಮದ ಅಥವಾ ಪರಿನಿಯಮಗಳ ಅಥವಾ ನಿಯಮಗಳ ಉಪಬಂಧಗಳಿಗೆ ಅನುಗುಣವಾಗಿ ಇರದ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ತೀರ್ಮಾನಗಳನ್ನು ಪುನರೀಕ್ಷಿಸುವುದು;

(iv) ವಿಶ್ವವಿದ್ಯಾಲಯದ ಆಯವ್ಯಯ ಮತ್ತು ವಾರ್ಷಿಕ ವರದಿಗಳನ್ನು ಅನುಮೋದಿಸುವುದು;

(v) ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸುವುದು ಅಥವಾ ಈಗಾಗಲೇ ಇರುವ ಪರಿನಿಯಮಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವುದು ಅಥವಾ ನಿರಸನಗೊಳಿಸುವುದು;

(vi) ವಿಶ್ವವಿದ್ಯಾಲಯವನ್ನು ಸ್ವಯಂಸಮಾಪನಗೊಳಿಸುವ ನಿರ್ಧಾರವನ್ನು ತೆಗೆದುಕೊಳ್ಳುವುದು;

(vii) ಸರ್ಕಾರಕ್ಕೆ ಸಲ್ಲಿಸುವ ಪ್ರಸ್ತಾವಗಳನ್ನು ಅನುಮೋದಿಸುವುದು;

(viii) ಶುಲ್ಕ ನಿಯಂತ್ರಣ ಸಮಿತಿಗೆ ಮೂವರು ಸದಸ್ಯರನ್ನು ನಾಮನಿರ್ದೇಶನ ಮಾಡುವುದು; ಮತ್ತು

(ix) ವಿಶ್ವವಿದ್ಯಾಲಯದ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕೆ ಅಪೇಕ್ಷಣೀಯವೆಂದು ಕಂಡುಬರುವಂಥ ತೀರ್ಮಾನಗಳನ್ನು ಮತ್ತು ಕ್ರಮಗಳನ್ನು ಕೈಗೊಳ್ಳುವುದು.

(7) ಪ್ರಬಂಧಕ ಮಂಡಳಿಯು ಒಂದು ವರ್ಷದಲ್ಲಿ ಕನಿಷ್ಠ ಮೂರು ಸಲ ಸಭೆ ಸೇರತಕ್ಕದ್ದು.

(8) ಪ್ರಬಂಧಕ ಮಂಡಳಿಯು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಸಮಯ ಮತ್ತು ಸ್ಥಳದಲ್ಲಿ ಸಭೆ ಸೇರತಕ್ಕದ್ದು.

**25. ವ್ಯವಸ್ಥಾಪನಾ ಮಂಡಳಿ.**– (1) ವ್ಯವಸ್ಥಾಪನಾ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಗಳು;

(ii) ಸಹಕುಲಪತಿಗಳು;

(iii) ಕುಲಸಚಿವರು;

(iv) ಪ್ರಾಯೋಜಕ ಸಂಸ್ಥೆಯ ಇಬ್ಬರು ನಾಮನಿರ್ದೇಶಿತರು;

(v) ಕುಲಪತಿಗಳು ನಾಮನಿರ್ದೇಶಿಸಬಹುದಾದ ಇಬ್ಬರು ಡೀನ್‌ಗಳು;

(2) ಕುಲಪತಿಯವರು ವ್ಯವಸ್ಥಾಪನಾ ಮಂಡಳಿಯ ಅಧ್ಯಕ್ಷರಾಗಿರತಕ್ಕದ್ದು ಮತ್ತು ಕುಲಸಚಿವರು ವ್ಯವಸ್ಥಾಪನಾ ಮಂಡಳಿಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ವ್ಯವಸ್ಥಾಪನಾ ಮಂಡಳಿಯು ವಿಶ್ವವಿದ್ಯಾಲಯದ ಕಾರ್ಯಕಾರಿ ಸಂಸ್ಥೆಯಾಗಿರತಕ್ಕದ್ದು. ವ್ಯವಸ್ಥಾಪನಾ ಮಂಡಳಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ವ್ಯವಸ್ಥಾಪನಾ ಮಂಡಳಿಯ ಎಲ್ಲಾ ಸಭೆಗಳಲ್ಲಿ ಯಾವಾಗಲೂ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು ಹಾಗೂ ಕುಲಪತಿಯವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೇ ಇದ್ದ ಸಂದರ್ಭದಲ್ಲಿ ಸಭೆಯಲ್ಲಿ ಹಾಜರಿರುವ ಸದಸ್ಯರು ಚುನಾಯಿಸಿದ ಯಾವುದೇ ಇತರ ಸದಸ್ಯರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ವ್ಯವಸ್ಥಾಪನಾ ಮಂಡಳಿಯ ಸಭೆಯಲ್ಲಿ ಯಾವುದೇ ವಿಷಯವನ್ನು ಕುರಿತು ವಿವಾದ ಉಂಟಾದಲ್ಲಿ ಸದರಿ ವಿಷಯವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯದ ಬಗ್ಗೆ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**26. ಶೈಕ್ಷಣಿಕ ಪರಿಷತ್ತು.**–(1) ಶೈಕ್ಷಣಿಕ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಕುಲಸಚಿವರು – ಕಾರ್ಯದರ್ಶಿಗಳು

(iv) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಶೈಕ್ಷಣಿಕ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಶೈಕ್ಷಣಿಕ ಸಂಸ್ಥೆಯಾಗಿರತಕ್ಕದ್ದು ಮತ್ತು ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಹಾಗೂ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಬಗ್ಗೆ ಸಾಮಾನ್ಯ (general) ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**27. ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು.–** (1) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಸಂಶೋಧನಾ ಮತ್ತು ಅನ್ವೇಷಣಾ ಸಮಿತಿಯಾಗಿರತಕ್ಕದ್ದು ಹಾಗೂ ಸಂಶೋಧನಾ ಕ್ಷೇತ್ರಗಳ ಆದ್ಯತೆಯೂ ಒಳಗೊಂಡಂತೆ, ವಿಶ್ವವಿದ್ಯಾಲಯವು ಕೈಗೊಳ್ಳಬೇಕಾದ ಸಂಶೋಧನೆಯ ಬಗ್ಗೆ ಒಂದು ವ್ಯಾಪಕವಾದ ಪರಿಪೂರ್ಣ ಭವಿಷ್ಯದ್ ದೃಷ್ಟಿಯನ್ನು ಒದಗಿಸತಕ್ಕದ್ದು. ಈ ಪರಿಷತ್ತು, ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಮತ್ತು ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಸಂಶೋಧನೆ ಮತ್ತು ಅನ್ವೇಷಣಾ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಪ್ರಧಾನ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಪತಿಯವರು – ಅಧ್ಯಕ್ಷರು

(ii) ಸಹಕುಲಪತಿಯವರು – ಸದಸ್ಯರು

(iii) ಸಂಶೋಧನೆಯ ಡೀನ್ – ಕಾರ್ಯದರ್ಶಿ

(iv) ಅನ್ವೇಷಣಾ ವಿಭಾಗದ ಮುಖ್ಯಸ್ಥರು – ಸದಸ್ಯರು

(V) ಎಲ್ಲಾ ವ್ಯಾಸಂಗ ವಿಭಾಗಗಳ ಡೀನ್‌ಗಳು – ಸದಸ್ಯರು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

**28. ಹಣಕಾಸು ಸಮಿತಿ.–** (1) ಹಣಕಾಸು ಸಮಿತಿ ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:–

(i) ಕುಲಾಧಿಪತಿಯವರು ಅಥವಾ ಅವರ ನಾಮನಿರ್ದೇಶಿತರು – ಅಧ್ಯಕ್ಷರು

(ii) ಸಹ–ಕುಲಾಧಿಪತಿಯವರು – ಸದಸ್ಯರು

(iii) ಕುಲಪತಿಯವರು – ಸದಸ್ಯರು

(iv) ಕುಲಸಚಿವರು – ಸದಸ್ಯರು

(v) ಹಣಕಾಸು ಅಧಿಕಾರಿ – ಕಾರ್ಯದರ್ಶಿ

(vi) ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು – ಸದಸ್ಯರು

(vii) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಹಣಕಾಸು ಸಮಿತಿಯು ಹಣಕಾಸಿನ ವಿಷಯಗಳನ್ನು ನೋಡಿಕೊಳ್ಳುವ ವಿಶ್ವವಿದ್ಯಾಲಯದ ಪ್ರಧಾನ ಹಣಕಾಸು ಸಂಸ್ಥೆಯಾಗಿರತಕ್ಕದ್ದು ಹಾಗೂ ಅದು ಈ ಅಧಿನಿಯಮ, ನಿಯಮಗಳು ಮತ್ತು ಪರಿನಿಯಮಗಳ ಉಪಬಂಧಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಹಣಕಾಸು ವಿಷಯಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**29. ಇತರ ಪ್ರಾಧಿಕಾರಗಳು.–** ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ರಚನೆ, ಅಧಿಕಾರಗಳು ಹಾಗೂ ಪ್ರಕಾರ್ಯಗಳು ಪರಿನಿಯಮಗಳಿಂದ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

**30. ಒಂದು ಪ್ರಾಧಿಕಾರದ ಅಥವಾ ಸಂಸ್ಥೆಯ ಸದಸ್ಯತ್ವಕ್ಕೆ ಅನರ್ಹತೆ.–** ವಿಶ್ವವಿದ್ಯಾಲಯದ ಸಂಸ್ಥೆಗಳ ಯಾವುವೇ ಪ್ರಾಧಿಕಾರಗಳ ಒಬ್ಬ ವ್ಯಕ್ತಿಯು,–

(ಎ) ಅಸ್ವಸ್ಥ ಚಿತ್ತನಾಗಿದ್ದು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿಸಲ್ಪಟ್ಟಿದ್ದರೆ;

(ಬಿ) ಅವಿಮುಕ್ತ ದಿವಾಳಿಯಾಗಿದ್ದರೆ;

(ಸಿ) ನೈತಿಕ ಅಧಃಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದರೆ;

(ಡಿ) ಖಾಸಗಿ ಬೋಧನಾ ತರಗತಿಗಳನ್ನು ನಡೆಸುತ್ತಿದ್ದರೆ ಅಥವಾ ಸ್ವತಃ ನಿರತನಾಗಿದ್ದರೆ;

(ಇ) ಯಾವುದೇ ವಿಧದಲ್ಲಿ, ಎಲ್ಲಿಯೇ, ಯಾವುದೇ ಪರೀಕ್ಷೆಯನ್ನು ನಡೆಸುವಲ್ಲಿ ಅನುಚಿತ ಅಭ್ಯಾಸದಲ್ಲಿ ತೊಡಗಿದ್ದಕ್ಕಾಗಿ ಅಥವಾ ಉತ್ತೇಜಿಸಿದ್ದಕ್ಕಾಗಿ ದಂಡಿತನಾಗಿದ್ದರೆ; ಮತ್ತು

(ಎಫ್) ಪ್ರಬಂಧಕರ ಮಂಡಳಿಯು ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಯಾವೊಬ್ಬ ಸದಸ್ಯನನ್ನು ಆ ಪದವನ್ನು ಹೊಂದಿರುವುದಕ್ಕೆ ಅರ್ಹನಲ್ಲನೆಂದು ಲಿಖಿತದಲ್ಲಿ ಅಭಿಪ್ರಾಯ ನೀಡಿದಾಗಲೆಲ್ಲಾ,

–ಸದಸ್ಯನಾಗಿರುವುದಕ್ಕೆ ಅನರ್ಹನಾಗತಕ್ಕದ್ದು.

**31. ಖಾಲಿಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಕಾರ್ಯ ಅಥವಾ ವ್ಯವಹರಣೆಗಳು ಕೇವಲ ಅದರಲ್ಲಿ ಯಾವುದೇ ಖಾಲಿಸ್ಥಾನ ಇದೆ ಎಂಬ ಕಾರಣದಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣದಿಂದ ಮಾತ್ರವೇ ಅಸಿಂಧುವಾಗತಕ್ಕದ್ದಲ್ಲ.

**32. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು.–** (1) ಯಾವುವೇ ಕಾರ್ಯಸೂಚಿ ವಿಷಯಗಳನ್ನು ಕುಲಾಧಿಪತಿಯವರ ಪೂರ್ವಾನುಮೋದನೆಯನ್ನು ಪಡೆಯದೇ ಪ್ರಬಂಧಕ ಮಂಡಳಿಯ ಅಥವಾ ವ್ಯವಸ್ಥಾಪನಾ ಮಂಡಳಿಯ ಅಥವಾ ಯಾವುದೇ ಸಮಿತಿಯ ಸಭೆಗಳ ಕಾರ್ಯಸೂಚಿ ವಿಷಯಗಳಲ್ಲಿ ಸೇರಿಸತಕ್ಕದ್ದಲ್ಲ ಅಥವಾ ಚರ್ಚೆಗೆ ತೆಗೆದುಕೊಳ್ಳತಕ್ಕದ್ದಲ್ಲ ಮತ್ತು ತೀರ್ಮಾನಿಸತಕ್ಕದ್ದಲ್ಲ.

(2) ಈ ಅಧಿನಿಯಮದ ಯಾವುದೇ ಉಪಬಂಧಗಳನ್ನು ಪಾಲಿಸದೆ ಇರುವ ಸಂದರ್ಭದಲ್ಲಿ, ಕುಲಾಧಿಪತಿಯವರು ವಿಶ್ವವಿದ್ಯಾಲಯದ ಯಾವುದೇ ಪದಾಧಿಕಾರಿ ಅಥವಾ ಸಂಸ್ಥೆಯು ತೆಗೆದುಕೊಂಡ ಎಲ್ಲಾ ತೀರ್ಮಾನಗಳನ್ನು ವಿಪರ್ಯಯಗೊಳಿಸುವ ಮೂಲಕ ಪರಿಹಾರ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಅಧಿಕಾರವನ್ನು ಎಲ್ಲಾ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಅಂಥ ಪರಿಹಾರ ಕ್ರಮದ ಪರಿಣಾಮವಾಗಿ ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ವಿಶ್ವವಿದ್ಯಾಲಯದ ಪದಾಧಿಕಾರಿ ಅಥವಾ ಸಂಸ್ಥೆಯು ಕೈಗೊಂಡಿದ್ದ ಎಲ್ಲಾ ಅಂಥ ಕ್ರಮಗಳು, ಮೊದಲಿನಿಂದಲೂ ಶೂನ್ಯ ಮತ್ತು ಅಕೃತ ಎಂದು ಭಾವಿಸತಕ್ಕದ್ದು ಹಾಗೂ ತತ್ಪರಿಣಾಮವಾಗಿ, ಉಪಬಂಧ ಪಾಲಿಸದೇ ಇದ್ದ ವಿಷಯ ಅಥವಾ ನಿರ್ಧಾರದ ಸಂಬಂಧದಲ್ಲಿ ಅದಕ್ಕೆ ಮುಂಚೆ ಇದ್ದ ವಸ್ತುಸ್ಥಿತಿಯೇ ಮುಂದುವರಿಯತಕ್ಕದ್ದು.

## ಅಧ್ಯಾಯ – V
## ಪರಿನಿಯಮಗಳು ಮತ್ತು ವಿನಿಯಮಗಳು

**33. ಪರಿನಿಯಮಗಳು.–** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಪರಿನಿಯಮಗಳು ವಿಶ್ವವಿದ್ಯಾಲಯಕ್ಕೆ ಮತ್ತು ಸಿಬ್ಬಂದಿಗೆ ಸಂಬಂಧಿಸಿದ ಎಲ್ಲಾ ಅಥವಾ ಯಾವುದೇ ವಿಷಯಕ್ಕೆ ಈ ಕೆಳಗಿನಂತೆ ಉಪಬಂಧ ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಕಾರ್ಯಕಲಾಪಗಳನ್ನು ನಡೆಸುವ ಮತ್ತು ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸದಿರುವ ಸಂಸ್ಥೆಗಳ ರಚನೆಯ ಕಾರ್ಯವಿಧಾನ;

(ii) ಶಾಶ್ವತ ಶಾಸನಬದ್ಧ ದತ್ತಿ ನಿಧಿ, ವಿಶ್ವವಿದ್ಯಾಲಯ ದತ್ತಿ ನಿಧಿ, ಸಾಮಾನ್ಯ ನಿಧಿ ಹಾಗೂ ಅಭಿವೃದ್ಧಿ ನಿಧಿಗಳ ನಿರ್ವಹಣೆ;

(iii) ಕುಲಪತಿಗಳು, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರ ನೇಮಕಾತಿಯ ನಿಬಂಧನೆಗಳು ಹಾಗೂ ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಪ್ರಕಾರ್ಯಗಳು;

(iv) ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ, ಅಧ್ಯಾಪಕರ ಮತ್ತು ನೌಕರರ ನೇಮಕಾತಿ ವಿಧಾನ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(v) ವಿಶ್ವವಿದ್ಯಾಲಯ ಹಾಗೂ ಅದರ ಅಧಿಕಾರಿಗಳು, ವ್ಯಾಸಂಗ ವಿಭಾಗದ (ಫ್ಯಾಕಲ್ಟಿ) ಸದಸ್ಯರು, ನೌಕರರು ಹಾಗೂ ವಿದ್ಯಾರ್ಥಿಗಳ ನಡುವೆ ಉಂಟಾದ ವಿವಾದಗಳನ್ನು ಪರಿಹರಿಸುವ ಕಾರ್ಯವಿಧಾನ;

(vi) ವಿಭಾಗಗಳು ಮತ್ತು ವ್ಯಾಸಂಗ ವಿಭಾಗಗಳ (ಫ್ಯಾಕಲ್ಟಿಗಳ) ಸೃಜನೆ, ರದ್ದತಿ ಅಥವಾ ಪುನಾರಚನೆ;

(vii) ಇತರ ವಿಶ್ವವಿದ್ಯಾಲಯಗಳು ಅಥವಾ ಉನ್ನತ ಕಲಿಕಾ ಸಂಸ್ಥೆಗಳ ಜೊತೆಯಲ್ಲಿ ಸಹಕರಿಸಬೇಕಾದ ರೀತಿ;

(viii) ಗೌರವ ಪದವಿಗಳ ನೀಡಿಕೆಯ ಕಾರ್ಯವಿಧಾನ;

(ix) ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿವೇತನ ಮಂಜೂರಾತಿಗೆ ಸಂಬಂಧಿಸಿದ ಉಪಬಂಧಗಳು;

(x) ವಿವಿಧ ವ್ಯಾಸಂಗ ಕ್ರಮಗಳಲ್ಲಿನ ಸೀಟುಗಳ ಸಂಖ್ಯೆಗೆ ಸಂಬಂಧಿಸಿದ ಕಾರ್ಯನೀತಿಗಳು ಮತ್ತು ಅಂಥ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಕಾರ್ಯವಿಧಾನ;

(xi) ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಶುಲ್ಕಕ್ಕೆ ಸಂಬಂಧಿಸಿದ ಕಾರ್ಯನೀತಿ;

(xii) ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಉಚಿತ ಶಿಕ್ಷಣಗಳು, ಪದಕಗಳು ಹಾಗೂ ಬಹುಮಾನಗಳನ್ನು ಪ್ರಾರಂಭಿಸುವುದು;

(xiii) ಹುದ್ದೆಗಳ ಸೃಜನೆ ಮತ್ತು ರದ್ದತಿಗಾಗಿನ ಕಾರ್ಯವಿಧಾನ; ಮತ್ತು

(xiv) ಪ್ರಬಂಧಕ ಮಂಡಳಿಯು ನಿರ್ಧರಿಸಬಹುದಾದ ಅಥವಾ ಈ ಅಧಿನಿಯಮದ ಅಡಿಯಲ್ಲಿ ಪರಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬೇಕಾದ ಅಗತ್ಯತೆಯುಳ್ಳ ಯಾವುದೇ ಇತರ ವಿಷಯಗಳು.

**34. ಪರಿನಿಯಮಗಳ ರಚನೆ ವಿಧಾನ.–** (1) ವ್ಯವಸ್ಥಾಪನಾ ಮಂಡಳಿಯು ರಚಿಸಿದ ಮೊದಲ ಪರಿನಿಯಮಗಳನ್ನು ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ವ್ಯವಸ್ಥಾಪನಾ ಮಂಡಳಿಯು ಸಲ್ಲಿಸಿದ ಮೊದಲ ಪರಿನಿಯಮಗಳನ್ನು ಪ್ರಬಂಧಕ ಮಂಡಳಿಯು ಪರಿಗಣಿಸತಕ್ಕದ್ದು ಹಾಗೂ ತಾನು ಅವಶ್ಯವೆಂದು ಭಾವಿಸಬಹುದಾದ ಅಂಥ ಮಾರ್ಪಾಡುಗಳು, ಯಾವುದಾದರು ಇದ್ದಲ್ಲಿ, ಅವುಗಳೊಡನೆ ತನ್ನ ಅನುಮೋದನೆಯನ್ನು ನೀಡತಕ್ಕದ್ದು.

(3) ವಿಶ್ವವಿದ್ಯಾಲಯವು, ಪ್ರಬಂಧಕ ಮಂಡಳಿಯು ಅನುಮೋದಿಸಿದ ಮೊದಲ ಪರಿನಿಯಮಗಳನ್ನು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ಪ್ರಕಟಿಸತಕ್ಕದ್ದು ಮತ್ತು ತದನಂತರ ಮೊದಲ ಪರಿನಿಯಮಗಳ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

35. **ಪರಿನಿಯಮಗಳ ತಿದ್ದುಪಡಿಯ ಅಧಿಕಾರ.**– ಪ್ರಬಂಧಕ ಮಂಡಳಿಯು ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸಬಹುದು ಅಥವಾ ಪರಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ಅವನ್ನು ನಿರಸನಗೊಳಿಸಬಹುದು.

36. **ವಿನಿಯಮಗಳು.**– ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ವಿನಿಯಮಗಳು ಈ ಮುಂದಿನ ವಿಷಯಗಳಿಗೆ ಉಪಬಂಧಗಳನ್ನು ಕಲ್ಪಿಸಬಹುದು, ಎಂದರೆ:–

(i) ವಿಶ್ವವಿದ್ಯಾಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ವಿದ್ಯಾರ್ಥಿ ಪಟ್ಟಿಯಲ್ಲಿ ಅವರುಗಳ ದಾಖಲಾತಿ ಹಾಗೂ ಮುಂದುವರಿಕೆ;

(ii) ವಿಶ್ವವಿದ್ಯಾಲಯದ ಎಲ್ಲಾ ಪದವಿಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ನಿಗದಿಪಡಿಸತಕ್ಕ ವ್ಯಾಸಂಗ ಕ್ರಮಗಳು;

(iii) ಪದವಿಗಳ ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರದಾನ;

(iv) ಸಂಶೋಧನಾ ವೇತನಗಳು (ಫೆಲೋಶಿಪ್), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಪದಕಗಳು ಮತ್ತು ಬಹುಮಾನಗಳನ್ನು ನೀಡಲು ಷರತ್ತುಗಳು;

(v) ಪರೀಕ್ಷೆಗಳನ್ನು ನಡೆಸುವುದು ಹಾಗೂ ಪರೀಕ್ಷೆ ನಡೆಸುವ ಸಂಸ್ಥೆಗಳು, ಪರೀಕ್ಷಕರು, ಪರೀಕ್ಷಾ ಮೇಲ್ವಿಚಾರಕರು, ಟ್ಯಾಬುಲೇಟರ್‌ಗಳು ಮತ್ತು ಮಾಡರೇಟರ್‌ಗಳ ನೇಮಕಾತಿ ವಿಧಾನ ಮತ್ತು ಷರತ್ತುಗಳು ಹಾಗೂ ಅವರ ಕರ್ತವ್ಯಗಳು;

(vi) ವಿಶ್ವವಿದ್ಯಾಲಯದ ಪರೀಕ್ಷೆಗಳಿಗೆ, ಪದವಿಗಳಿಗೆ ಹಾಗೂ ಇತರ ಶೈಕ್ಷಣಿಕ ಪ್ರಶಸ್ತಿಗಳಿಗೆ ಪ್ರವೇಶಕ್ಕೆ ವಿಧಿಸತಕ್ಕ ಶುಲ್ಕ;

(vii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನಲ್ಲಿ ವಿದ್ಯಾರ್ಥಿಗಳ ನಿವಾಸಕ್ಕಾಗಿ ಷರತ್ತುಗಳು;

(viii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಶಿಸ್ತು ಪಾಲನೆ; ಮತ್ತು

(ix) ಈ ಅಧಿನಿಯಮದ ಅಡಿಯಲ್ಲಿನ ಪರಿನಿಯಮಗಳಲ್ಲಿ ಉಪಬಂಧ ಕಲ್ಪಿಸಬಹುದಾಂಥ ಇತರ ಎಲ್ಲಾ ವಿಷಯಗಳು.

37. **ವಿನಿಯಮಗಳ ರಚನೆ ವಿಧಾನ.**– ವಿನಿಯಮಗಳನ್ನು ಶೈಕ್ಷಣಿಕ ಪರಿಷತ್ತು ರಚಿಸತಕ್ಕದ್ದು ಹಾಗೂ ವ್ಯವಸ್ಥಾಪನಾ ಮಂಡಳಿಯು ಅನುಮೋದಿಸತಕ್ಕದ್ದು.

38. **ವಿನಿಯಮಗಳ ತಿದ್ದುಪಡಿಗೆ ಅಧಿಕಾರ.**– ವ್ಯವಸ್ಥಾಪನಾ ಮಂಡಳಿಯ ಅನುಮೋದನೆಯೊಡನೆ ಶೈಕ್ಷಣಿಕ ಪರಿಷತ್ತು ಹೊಸ ವಿನಿಯಮಗಳನ್ನು ಅಥವಾ ಹೆಚ್ಚುವರಿ ವಿನಿಯಮಗಳನ್ನು ರಚಿಸಬಹುದು ಅಥವಾ ವಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ನಿರಸನಗೊಳಿಸಬಹುದು.

39. **ಶುಲ್ಕ ನಿಗಧಿ.**– (1) 9ನೇ ಪ್ರಕರಣದ ಪರಂತುಕದ ಅಡಿಯಲ್ಲಿ ರಾಜ್ಯ ಸರ್ಕಾರದ ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡಲಾದ ಪ್ರವೇಶಗಳಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳಲ್ಲಿನ ಶೇಕಡಾ ನಲವತ್ತರಷ್ಟು ಪ್ರವೇಶಗಳ ಸಂಬಂಧದಲ್ಲಿ ಶುಲ್ಕವು ಸರ್ಕಾರ ಮತ್ತು ವಿಶ್ವವಿದ್ಯಾಲಯವು ಸಮ್ಮತಾಭಿಪ್ರಾಯದ ಒಪ್ಪಂದದ ಪ್ರಕಾರ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) ಅಧಿನಿಯಮ, 2006ರ (2006ರ ಕರ್ನಾಟಕ ಅಧಿನಿಯಮ 8) ಅನುಸಾರವಾಗಿ ಸರ್ಕಾರಿ ಸೀಟುಗಳಿಗಾಗಿ ರಾಜ್ಯ ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸಿದಂತೆ ಇರತಕ್ಕದ್ದು.

(2) ವಿಶ್ವವಿದ್ಯಾಲಯದ ಇತರ ಸೀಟುಗಳಿಗೆ ಸಂಬಂಧಿಸಿದಂತೆ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳು (ಪ್ರವೇಶ, ನಿಯಂತ್ರಣ ಮತ್ತು ಶುಲ್ಕ ನಿಗದಿ) ಅಧಿನಿಯಮ, 2006ರ (2006ರ ಕರ್ನಾಟಕ ಅಧಿನಿಯಮ 8) 6ನೇ ಪ್ರಕರಣದ ಉಪಬಂಧಗಳ ಅನುಸಾರವಾಗಿ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರ ಅಧ್ಯಕ್ಷತೆಯ ಅಡಿಯಲ್ಲಿ ರಚಿಸಲಾದ ಶುಲ್ಕ ನಿಯಂತ್ರಣ ಸಮಿತಿಯ ಮೂಲಕ ಶುಲ್ಕವನ್ನು ನಿಗದಿಪಡಿಸತಕ್ಕದ್ದು. ಈ ಪ್ರಕರಣದ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವನ್ನು ಖಾಸಗಿ ಅನುದಾನರಹಿತ ವೃತ್ತಿಪರ ಶಿಕ್ಷಣ ಸಂಸ್ಥೆ ಎಂದು ಭಾವಿಸತಕ್ಕದ್ದು.

## ಅಧ್ಯಾಯ – VI

### ಸಂಕೀರ್ಣ

**40. ನೌಕರರ ಸೇವಾ ಷರತ್ತುಗಳು.–** (1) ಪರಿನಿಯಮಗಳ ಮತ್ತು ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಥವಾ ನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳು, ಯಾವುದಾದರೂ ಇದ್ದಲ್ಲಿ, ಅವುಗಳಿಗೆ ಒಳಪಟ್ಟು ಪ್ರತಿಯೊಬ್ಬ ನೌಕರನು ಲಿಖಿತ ಕರಾರಿನ ಅಡಿಯಲ್ಲಿ ನೇಮಕಗೊಳ್ಳತಕ್ಕದ್ದು ಮತ್ತು ಅದನ್ನು ವಿಶ್ವವಿದ್ಯಾಲಯದಲ್ಲಿ ಇಟ್ಟುಕೊಳ್ಳತಕ್ಕದ್ದು ಹಾಗೂ ಅದರ ಪ್ರತಿಯನ್ನು ಸಂಬಂಧಪಟ್ಟ ನೌಕರನಿಗೆ ನೀಡತಕ್ಕದ್ದು.

(2) ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಕಾರ್ಯವಿಧಾನಗಳ ಮೂಲಕ ನಿಯಂತ್ರಿಸತಕ್ಕದ್ದು.

(3) ಕರಾರಿನಿಂದಾಗಿ ವಿಶ್ವವಿದ್ಯಾಲಯ ಮತ್ತು ನೌಕರನ ಮಧ್ಯದಲ್ಲಿ ಉದ್ಭವಿಸಬಹುದಾದ ಯಾವುದೇ ವಿವಾದವನ್ನು, ಲಿಖಿತ ಕರಾರಿನಲ್ಲಿ ಉಪಬಂಧಿಸಿದ ವಿಧಾನದಲ್ಲಿ ಹಾಗೂ ಪರಿನಿಯಮಗಳ ಅನುಸಾರವಾಗಿ ಪರಿಹರಿಸತಕ್ಕದ್ದು.

**41. ಮೇಲ್ಮನವಿ ಹಕ್ಕು.–** ವಿಶ್ವವಿದ್ಯಾಲಯವು ತನ್ನ ನೌಕರರ ಅಥವಾ ವಿದ್ಯಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡ ಸಂದರ್ಭದಲ್ಲಿ, ಬಾಧಿತ ನೌಕರ ಅಥವಾ ವಿದ್ಯಾರ್ಥಿಗಳು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಿದ ಅಂಥ ಪ್ರಾಧಿಕಾರಕ್ಕೆ ಮೇಲ್ಮನವಿ ಸಲ್ಲಿಸುವ ಹಕ್ಕನ್ನು ಹೊಂದಿರತಕ್ಕದ್ದು.

**42. ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿ.–** ವಿಶ್ವವಿದ್ಯಾಲಯವು, ತನ್ನ ನೌಕರರ ಪ್ರಯೋಜನಕ್ಕಾಗಿ, ಪರಿನಿಯಮಗಳು ಮತ್ತು ಜಾರಿಯಲ್ಲಿರುವ ಕಾನೂನುಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿಯನ್ನು ರಚಿಸತಕ್ಕದ್ದು ಹಾಗೂ ಅಂಥ ವಿಮಾ ಯೋಜನೆಗಳನ್ನು ಒದಗಿಸತಕ್ಕದ್ದು.

**43. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಇತರ ಸಂಸ್ಥೆಯ ಸದಸ್ಯನಾಗಿ ಯಾವೊಬ್ಬ ವ್ಯಕ್ತಿಯು ಸೂಕ್ತವಾಗಿ ಆಯ್ಕೆಯಾಗಿದ್ದಾನೆಯೇ ಅಥವಾ ನೇಮಕಗೊಂಡಿದ್ದಾನೆಯೇ ಅಥವಾ ಅದಕ್ಕೆ ಅರ್ಹನಾಗಿದ್ದಾನೆಯೇ ಎಂಬ ಯಾವುದೇ ಪ್ರಶ್ನೆ ಉದ್ಭವಿಸಿದರೆ, ಆ ವಿಷಯವನ್ನು ತೀರ್ಮಾನಕ್ಕಾಗಿ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**44. ಸಮಿತಿಗಳ ರಚನೆ.–** 22ನೇ ಪ್ರಕರಣದಲ್ಲಿ ನಮೂದಿಸಿದ ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಅಧಿಕಾರವನ್ನು ಹೊಂದಿರುವ ಅಂಥ ಸದಸ್ಯರನ್ನು ಒಳಗೊಂಡ ಅಂಥ ಪ್ರಾಧಿಕಾರದ ಒಂದು ಸಮಿತಿಯನ್ನು ರಚಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**45. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಂಸ್ಥೆಯ ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ಪೈಕಿ ಯಾವುದೇ ಸ್ಥಾನವು ಆಕಸ್ಮಿಕವಾಗಿ ಖಾಲಿಯಾದರೆ, ಯಾರ ಸ್ಥಾನವು ಖಾಲಿಯಾಗಿ ತುಂಬಬೇಕಾಗಿ ಬಂದಿದೆಯೋ ಆ ಸದಸ್ಯನನ್ನು ಯಾವ ರೀತಿಯಲ್ಲಿ ಆರಿಸಲಾಗಿತ್ತೋ ಅದೇ ರೀತಿಯಲ್ಲಿ ಹೊಸ ಸದಸ್ಯನನ್ನು ಆರಿಸಿ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ಖಾಲಿ ಸ್ಥಾನವನ್ನು ಭರ್ತಿ ಮಾಡಿದ ವ್ಯಕ್ತಿಯು ಆತನು ಯಾವ ಸದಸ್ಯನ ಸ್ಥಾನದಲ್ಲಿ ಭರ್ತಿಯಾಗಿರುವನೋ ಆ ಸದಸ್ಯನು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯನಾಗಿ ಉಳಿಯುತ್ತಿದ್ದ ಬಾಕಿ ಅವಧಿಯವರೆಗೆ ಮಾತ್ರ ಸದಸ್ಯನಾಗಿರತಕ್ಕದ್ದು.

**46. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.–** ಈ ಅಧಿನಿಯಮ ಅಥವಾ ಪರಿನಿಯಮಗಳು ಅಥವಾ ನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ವಿಶ್ವವಿದ್ಯಾಲಯದ ಯಾವೊಬ್ಬ ಅಧಿಕಾರಿ ಅಥವಾ ಇತರ ನೌಕರರ ವಿರುದ್ಧ ಯಾವುದೇ ದಾವೆ ಅಥವಾ ಇತರ ಕಾನೂನು ವ್ಯವಹರಣೆಗಳನ್ನು ನಡೆಸಲು ಅವಕಾಶ ಇರತಕ್ಕದ್ದಲ್ಲ.

**47. ತಾತ್ಕಾಲಿಕ ಉಪಬಂಧಗಳು.–** ಈ ಅಧಿನಿಯಮ ಮತ್ತು ಪರಿನಿಯಮಗಳ ಯಾವುದೇ ಇತರ ಉಪಬಂಧಗಳಲ್ಲಿ ಏನೇ ಇದ್ದರೂ,–

(i) ಮೊದಲ ಕುಲಪತಿ ಮತ್ತು ಸಹಕುಲಪತಿ, ಯಾರಾದರೂ ಇದ್ದರೆ, ಅವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(ii) ಮೊದಲ ಕುಲಸಚಿವರನ್ನು ಮತ್ತು ಮೊದಲ ಹಣಕಾಸು ಅಧಿಕಾರಿಯವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು; ಮತ್ತು

(iii) ಮೊದಲ ವ್ಯವಸ್ಥಾಪನ ಮಂಡಳಿ, ಮೊದಲ ಹಣಕಾಸು ಸಮಿತಿ, ಮೊದಲ ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಹಾಗೂ ಮೊದಲ ಶೈಕ್ಷಣಿಕ ಪರಿಷತ್ತನ್ನು ಕುಲಾಧಿಪತಿಯವರು ರಚಿಸತಕ್ಕದ್ದು.

**48. ಶಾಶ್ವತ ಶಾಸನಬದ್ಧ ದತ್ತಿ ನಿಧಿ.–** (1) ವಿಶ್ವವಿದ್ಯಾಲಯವು, ಕನಿಷ್ಠ ಇಪ್ಪತ್ತೈದು ಕೋಟಿ ರೂಪಾಯಿಗಳನ್ನುಳ್ಳ ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು ಇದರ ಪೈಕಿ ಕನಿಷ್ಠ ಹದಿನೈದು ಕೋಟಿ ರೂಪಾಯಿಗಳು ನಗದು ರೂಪದಲ್ಲಿ ಮತ್ತು ಇನ್ನುಳಿದದ್ದು ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ಇರತಕ್ಕದ್ದು ಮತ್ತು ಇದನ್ನು ತಾನಾಗಿಯೆ ಹೆಚ್ಚಿಸಬಹುದಾಗಿದ್ದು ಆದರೆ ಕಡಿಮೆ ಮಾಡತಕ್ಕದ್ದಲ್ಲ:

ಪರಂತು, ಬೆಂಗಳೂರು ಅಥವಾ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊರಗಿರುವ ವಿಶ್ವವಿದ್ಯಾಲಯದ ಸಂದರ್ಭದಲ್ಲಿ ಕನಿಷ್ಠ ಹತ್ತು ಕೋಟಿ ರೂಪಾಯಿಗಳು ನಗದು ರೂಪದಲ್ಲಿರತಕ್ಕದ್ದು ಮತ್ತು ಉಳಿದ ಐದು ಕೋಟಿ ರೂಪಾಯಿಗಳು ಬ್ಯಾಂಕ್ ಗ್ಯಾರಂಟಿಯ ರೂಪದಲ್ಲಿರತಕ್ಕದ್ದು.

(2) ವಿಶ್ವವಿದ್ಯಾಲಯವು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಹಣವನ್ನು ಹೂಡಲು ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯವು ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಗೆ ವರ್ಗಾವಣೆ ಮಾಡಬಹುದು. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನೂ ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(4) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಿದ ವರಮಾನದ ಶೇಕಡಾ ಎಪ್ಪತ್ತೈದರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತೈದರಷ್ಟನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಯಲ್ಲಿ ಪುನ: ತೊಡಗಿಸತಕ್ಕದ್ದು.

**49. ವಿಶ್ವವಿದ್ಯಾಲಯದ ದತ್ತಿ ನಿಧಿ.–** (1) ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ನಿಧಿಗಳನ್ನು ಒಳಗೊಂಡ ವಿಶ್ವವಿದ್ಯಾಲಯದ ದತ್ತಿ ನಿಧಿಯನ್ನು ವಿಶ್ವವಿದ್ಯಾಲಯವು ಸ್ಥಾಪಿಸತಕ್ಕದ್ದು. ಇದು ಕಾಲಕಾಲಕ್ಕೆ ಸ್ವೀಕರಿಸಬಹುದಾದ ದೇಣಿಗೆಗಳು ಮತ್ತು ಇತರ ನಿಧಿಗಳನ್ನು ಒಳಗೊಂಡಿರತಕ್ಕದ್ದು.

(2) ವಿಶ್ವವಿದ್ಯಾಲಯವು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ವಿಶ್ವವಿದ್ಯಾಲಯದ ದತ್ತಿನಿಧಿಯನ್ನು ಹೂಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯ ದತ್ತಿ ನಿಧಿಯು, ವಿಶ್ವವಿದ್ಯಾಲಯವು ತನ್ನ ಸಾಮಾಜಿಕ ಧ್ಯೇಯೋದ್ದೇಶಗಳನ್ನು ನೆರವೇರಿಸುವ ಸಂದರ್ಭದಲ್ಲಿ ಮತ್ತು/ಅಥವಾ ಮುಂಗಾಣದ ಸನ್ನಿವೇಶದಲ್ಲಿ ಉದ್ಭವಿಸಬಹುದಾದ ಹಣಕಾಸು ಸವಾಲುಗಳಿಂದ ತನ್ನನ್ನು ರಕ್ಷಿಸಿಕೊಳ್ಳುವುದಕ್ಕಾಗಿ, ಸ್ವಇಚ್ಛೆಯಿಂದ ನಿರ್ವಹಿಸಿಕೊಂಡು ಬರಲು ಮತ್ತು ಜವಾಬ್ದಾರಿಯಿಂದ ಹಣ ಹೂಡಿಕೆ ಮಾಡಲು ಇಚ್ಛೆಯುಳ್ಳವರಾಗಿ ಸ್ವಯಂ ವಿಧಿಸಿಕೊಂಡ ನಿಧಿಯಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಗೆ ವರ್ಗಾಯಿಸಬಹುದು. ವಿಶ್ವವಿದ್ಯಾಲಯದ ಸಮಾಪಣೆಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನು ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(5) ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಬರುವ ವರಮಾನದ ಶೇಕಡಾ ಎಂಭತ್ತರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸದ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತರಷ್ಟನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**50. ಸಾಮಾನ್ಯ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಸಾಮಾನ್ಯ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿಶ್ವವಿದ್ಯಾಲಯವು ವಿಧಿಸಬಹುದಾದ ಎಲ್ಲಾ ಶುಲ್ಕಗಳು;

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವುದೇ ಇತರ ಮೂಲದಿಂದ ಸ್ವೀಕರಿಸಲಾದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ದೇಣಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು ಅಥವಾ ವಂತಿಗೆಗಳು;

(2) ಸಾಮಾನ್ಯ ನಿಧಿಗೆ ಜಮಾ ಮಾಡುವ ನಿಧಿಗಳನ್ನು ವಿಶ್ವವಿದ್ಯಾಲಯದ ಎಲ್ಲಾ ಆವರ್ತಕ ವೆಚ್ಚಗಳನ್ನು ಭರಿಸಲು ಉಪಯೋಗಿಸಕೊಳ್ಳತಕ್ಕದ್ದು.

**51. ಅಭಿವೃದ್ಧಿ ನಿಧಿ.–** (1) ವಿಶ್ವವಿದ್ಯಾಲಯವು, ಒಂದು ಅಭಿವೃದ್ಧಿ ನಿಧಿಯನ್ನು ಸಹ ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:–

(i) ವಿದ್ಯಾರ್ಥಿಗಳಿಂದ ವಿಧಿಸಬಹುದಾದ ಅಭಿವೃದ್ಧಿ ಶುಲ್ಕಗಳು;

(ii) ವಿಶ್ವವಿದ್ಯಾಲಯದ ಅಭಿವೃದ್ಧಿಯ ಉದ್ದೇಶಗಳಿಗಾಗಿ ಯಾವುದೇ ಇತರ ಮೂಲಗಳಿಂದ ಸ್ವೀಕರಿಸಿದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ವಂತಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು ಅಥವಾ ವಂತಿಗೆಗಳು; ಮತ್ತು

(v) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಲಾದ ಎಲ್ಲಾ ವರಮಾನಗಳು.

(2) ಅಭಿವೃದ್ಧಿ ನಿಧಿಗೆ ಕಾಲಕಾಲಕ್ಕೆ ಜಮಾ ಮಾಡಿದ ನಿಧಿಯನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಉಪಯೋಗಿಸಕೊಳ್ಳತಕ್ಕದ್ದು.

**52. ನಿಧಿಗಳ ನಿರ್ವಹಣೆ.–** 48, 49, 50 ಮತ್ತು 51ನೇ ಪ್ರಕರಣಗಳಡಿಯಲ್ಲಿ ಸ್ಥಾಪಿಸಲಾದ ನಿಧಿಗಳನ್ನು ಪ್ರಬಂಧಕ ಮಂಡಳಿಯ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ನಿಯಂತ್ರಿಸತಕ್ಕದ್ದು ಹಾಗೂ ನಿರ್ವಹಿಸತಕ್ಕದ್ದು.

**53. ವಾರ್ಷಿಕ ವರದಿ.–** (1) ವಿಶ್ವವಿದ್ಯಾಲಯದ ವಾರ್ಷಿಕ ವರದಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ಸಿದ್ಧಪಡಿಸತಕ್ಕದ್ದು ಮತ್ತು ಅದರ ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಪ್ರಬಂಧಕ ಮಂಡಳಿಯು ವಾರ್ಷಿಕ ವರದಿಯನ್ನು ತನ್ನ ಸಭೆಯಲ್ಲಿ ಪರಿಗಣಿಸತಕ್ಕದ್ದು ಹಾಗೂ ಅದನ್ನು ಮಾರ್ಪಾಡುಗಳೊಡನೆ ಅಥವಾ ಮಾರ್ಪಾಡುಗಳಿಲ್ಲದೆ ಅನುಮೋದಿಸಬಹುದು.

(3) ಪ್ರಬಂಧಕ ಮಂಡಳಿಯು ಸೂಕ್ತವಾಗಿ ಅನುಮೋದಿಸಿದ ವಾರ್ಷಿಕ ವರದಿಯ ಒಂದು ಪ್ರತಿಯನ್ನು ಪ್ರತಿವರ್ಷದ ಮಾರ್ಚ್ ತಿಂಗಳಿನಲ್ಲಿ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ಡಿಸೆಂಬರ್ 31ಕ್ಕೆ ಮೊದಲು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**54. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.–** (1) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕ ಪತ್ರ ಮತ್ತು ಜಮಾ ಖರ್ಚು ಪಟ್ಟಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ಸಿದ್ಧಪಡಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯಕ್ಕೆ ಎಲ್ಲಾ ಮೂಲಗಳಿಂದ ಪ್ರಾಪ್ತವಾಗುವ ಅಥವಾ ಸ್ವೀಕರಿಸಲಾಗುವ ಎಲ್ಲಾ ನಿಧಿಗಳು ಹಾಗೂ ವಿತರಿಸಿದ ಅಥವಾ ಸಂದಾಯ ಮಾಡಿದ ಎಲ್ಲಾ ಮೊಬಲಗುಗಳನ್ನು ವಿಶ್ವವಿದ್ಯಾಲಯವು ನಿರ್ವಹಿಸುವ ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕಪತ್ರಗಳನ್ನು ಪ್ರತಿ ವರ್ಷವೂ ಭಾರತದ ಚಾರ್ಟೆಡ್ ಅಕೌಂಟೆಂಟ್‌ಗಳ ಸಂಸ್ಥೆಯ ಸದಸ್ಯರಾಗಿರುವ ಒಬ್ಬ ಲೆಕ್ಕಪರಿಶೋಧಕರಿಂದ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಲೆಕ್ಕಪರಿಶೋಧನಾ ವರದಿಯೊಡನೆ, ಪ್ರತಿ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ನವೆಂಬರ್ 30ಕ್ಕೆ ಮೊದಲು ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(4) ವಾರ್ಷಿಕ ಲೆಕ್ಕಪತ್ರಗಳು, ಜಮಾಖರ್ಚು ಪಟ್ಟಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಪ್ರಬಂಧಕ ಮಂಡಳಿಯು ತನ್ನ ಸಭೆಯಲ್ಲಿ ಪರ್ಯಾಲೋಚಿಸತಕ್ಕದ್ದು ಮತ್ತು ಪ್ರಬಂಧಕ ಮಂಡಳಿಯು ಅದನ್ನು ತನ್ನ ಅಭಿಪ್ರಾಯಗಳೊಡನೆ ಸಂದರ್ಶಕರಿಗೆ ಹಾಗೂ ಸರ್ಕಾರಕ್ಕೆ ಪ್ರತಿ ವರ್ಷದ ಡಿಸೆಂಬರ್ 31ಕ್ಕೆ ಮೊದಲು ಕಳುಹಿಸತಕ್ಕದ್ದು.

(5) ಲೆಕ್ಕಪರಿಶೋಧಕರ ವರದಿಯಲ್ಲಿ ಯಾವುದೇ ಮುಖ್ಯ ಬದಲಾವಣೆ ಇದ್ದ ಸಂದರ್ಭದಲ್ಲಿ, ಅವುಗಳನ್ನು ಸರಿಪಡಿಸಲು, ರಾಜ್ಯ ಸರ್ಕಾರವು ವಿಶ್ವವಿದ್ಯಾಲಯಕ್ಕೆ ನಿರ್ದೇಶನಗಳನ್ನು ನೀಡಬಹುದು ಮತ್ತು ಅಂಥ ನಿರ್ದೇಶನಗಳು ವಿಶ್ವವಿದ್ಯಾಲಯದ ಮೇಲೆ ಬಂಧನಕಾರಿಯಾಗಿರತಕ್ಕದ್ದು.

**55. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ.–** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಮಿತಿಯ ಯಾವುದೇ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ ಅಥವಾ ಗೊತ್ತುವಳಿಯ ಅಥವಾ ವಿಶ್ವವಿದ್ಯಾಲಯದ ಸ್ವಾಧೀನದಲ್ಲಿರುವ ಇತರ ದಾಖಲೆಗಳು ಅಥವಾ ವಿಶ್ವವಿದ್ಯಾಲಯವು ಯುಕ್ತವಾಗಿ ನಿರ್ವಹಿಸುವ ಯಾವುದೇ ರಿಜಿಸ್ಟರ್‌ನಲ್ಲಿಯ ಯಾವುದೇ ನಮೂದುಗಳ ಪ್ರತಿಯನ್ನು, ಅದರ ಮೇಲೆ ಕುಲಸಚಿವರು ಪ್ರಮಾಣೀಕರಿಸಿದ್ದರೆ, ಅದನ್ನು ಅಂಥ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ, ಗೊತ್ತುವಳಿ ಅಥವಾ ದಾಖಲೆ ಅಥವಾ ರಿಜಿಸ್ಟರ್‌ನಲ್ಲಿ ಇರುವ ನಮೂದನ್ನು ಮೇಲ್ನೋಟದ ಸಾಕ್ಷ್ಯವೆಂಬುದಾಗಿ ಸ್ವೀಕರಿಸತಕ್ಕದ್ದು ಮತ್ತು ವಿಷಯಗಳ ಸಾಕ್ಷಿಯಾಗಿ ಅಂಗೀಕರಿಸತಕ್ಕದ್ದು ಹಾಗೂ ಮೂಲ ದಾಖಲೆಗಳನ್ನೇ ಸಲ್ಲಿಸಿದ್ದರೆ ಅದನ್ನು, ದಾಖಲಿಸಿರುವ ವಿಷಯಗಳು ಮತ್ತು ವಹಿವಾಟುಗಳ ಸಾಕ್ಷ್ಯವಾಗಿ ಅಂಗೀಕರಿಸಲಾಗುತ್ತಿತ್ತೋ, ಅದೇ ರೀತಿಯಲ್ಲಿ ಇವನ್ನೂ ಸಾಕ್ಷ್ಯವಾಗಿ ಅಂಗೀಕರಿಸತಕ್ಕದ್ದು.

**56. ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ.–** ರಾಜ್ಯಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಥವಾ ಅದರಲ್ಲಿ ಇರುವ ಯಾವುವೇ ಉಪಬಂಧಗಳನ್ನು ಅಥವಾ ಅದರಡಿಯಲ್ಲಿ ರಚಿಸಿದ ಯಾವುವೇ ನಿಯಮಗಳು ಅಥವಾ ಆದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿರ್ದೇಶನ ನೀಡುವುದು ಅವಶ್ಯವೆಂದು ಅಥವಾ ಉಚಿತವೆಂದು ಅಭಿಪ್ರಾಯಪಟ್ಟಲ್ಲಿ ಅದು ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ ಅಥವಾ ಸಂದರ್ಭಾನುಸಾರವಾಗಿ ವ್ಯವಸ್ಥಾಪನಾ ಮಂಡಳಿಯು ಅಂಥ ಪ್ರತಿಯೊಂದು ನಿರ್ದೇಶನವನ್ನು ಪಾಲಿಸತಕ್ಕದ್ದು.

**57. ದಂಡಗಳು.–** (1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿತವಾದ ನಿಯಮಗಳು ಉಪಬಂಧಗಳನ್ನು ಅಥವಾ ಯಾವುದೇ ಪರೀಕ್ಷಾ ವಿಷಯಗಳನ್ನು ಅಥವಾ ಪದವಿಗಳನ್ನು ನೀಡುವುದಕ್ಕೆ ಅಥವಾ ಅಂಕಪಟ್ಟಿಗಳನ್ನು ನೀಡುವುದಕ್ಕೆ ಸಂಬಂಧಪಟ್ಟ ವಿಷಯಗಳಲ್ಲಿ ಉಲ್ಲಂಘನೆಗಳನ್ನು ಮಾಡುವ ಯಾವೊಬ್ಬ ವ್ಯಕ್ತಿಯು, ಅಪರಾಧ ನಿರ್ಣಯವಾದ ಮೇಲೆ, ಐವತ್ತು ಸಾವಿರ ರೂಪಾಯಿಗಳಿಗೆ ಕಡಿಮೆಯಲ್ಲದ ಆದರೆ ಹತ್ತು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಆರು ತಿಂಗಳ ಅವಧಿಗಿಂತ ಕಡಿಮೆಯಲ್ಲದ ಆದರೆ ಎರಡು ವರ್ಷಗಳ ಅವಧಿಯವರೆಗೆ ವಿಸ್ತರಿಸಬಹುದಾದ ಕಾರಾವಾಸದಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು:

ಪರಂತು, ಅಪರಾಧವನ್ನು ಎಸಗುವಲ್ಲಿ ವಿಶ್ವವಿದ್ಯಾಲಯವೂ ಸಹ ಒಳಗೊಂಡಿರುವಲ್ಲಿ, ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಈ ಅಧಿನಿಯಮದ ಅಡಿಯಲ್ಲಿ ಮಂಜೂರು ಮಾಡಲಾದ ಅನುಮತಿ ಪತ್ರವನ್ನು ಹಿಂತೆಗೆದುಕೊಳ್ಳತಕ್ಕದ್ದು.

(2) ಈ ಪ್ರಕರಣದ ಅಡಿಯಲ್ಲಿಯ ದಂಡವನ್ನು ಇತರ ಯಾವುದೇ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಲಾದ ದಂಡಕ್ಕೆ ಬಾಧಕವಾಗದಂತೆ ವಿಧಿಸಬಹುದು.

**58. ಪ್ರವೇಶಿಸುವ ಮತ್ತು ಪರಿಶೋಧಿಸುವ ಅಧಿಕಾರ.–** ಈ ಉದ್ದೇಶಕ್ಕಾಗಿ, ರಾಜ್ಯಸರ್ಕಾರದಿಂದ ಪ್ರಾಧಿಕೃತಗೊಂಡ 'ಎ' ಸಮೂಹದ ಅಧಿಕಾರಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಯಾವೊಬ್ಬ ಅಧಿಕಾರಿಯು, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಶನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ 37) ಅಡಿಯಲ್ಲಿ ನಿರ್ದಿಷ್ಟಪಡಿಸಿರಬಹುದಾದ ಅಂಥ ಷರತ್ತುಗಳಿಗೆ ಒಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ, ಆ ಅಧಿನಿಯಮದ 9ನೇ ಪ್ರಕರಣದ ಅಡಿಯಲ್ಲಿ ಉಪಬಂಧಿಸಲಾದಂತಹವೇ ಅಧಿಕಾರಗಳನ್ನು ಚಲಾಯಿಸಲು ಮತ್ತು ಪ್ರಕಾರ್ಯಗಳನ್ನು ನೆರವೇರಿಸಲು ಅಧಿಕೃತನಾದ ಅಧಿಕಾರಿ ಎಂಬುದಾಗಿ ಭಾವಿಸತಕ್ಕದ್ದು.

**59. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ನಿರ್ದೇಶನವನ್ನು ನೀಡುವ ಅಧಿಕಾರ.–** (1) ವಿಶ್ವವಿದ್ಯಾಲಯವು ತನ್ನ ರಚನೆ ಅಥವಾ ನಿಗಮನವನ್ನು ನಿಯಂತ್ರಿಸುವ ಕಾನೂನಿಗೆ ಅನುಸಾರವಾಗಿ ತನ್ನ ಸಮಾಪನವನ್ನು ಉದ್ದೇಶಿಸಿದ್ದಲ್ಲಿ, ಅದು ಕನಿಷ್ಠ ಆರು ತಿಂಗಳ ಲಿಖಿತ ಪೂರ್ವ ಸೂಚನೆಯನ್ನು (ನೋಟಿಸು) ಸರ್ಕಾರಕ್ಕೆ ನೀಡತಕ್ಕದ್ದು.

(2) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಈ ಕೆಳಗಿನವುಗಳ ಬಗ್ಗೆ, ಎಂದರೆ:–

(i) ಪದವಿಯನ್ನು ನೀಡುವುದಕ್ಕಾಗಿ ಬೋಧನೆಯ ಗುಣಮಟ್ಟ;

(ii) ಶಿಕ್ಷಣದ ಗುಣಮಟ್ಟ;

(iii) ಉನ್ನತ ಶಿಕ್ಷಣದ ವ್ಯಾಪಾರೀಕರಣವನ್ನು ತಡೆಗಟ್ಟುವುದು;

(iv) ಅಧಿನಿಯಮದ ಉಪಬಂಧಗಳ ಉಲ್ಲಂಘನೆಯ ಬಗ್ಗೆ, ಯಾವುದಾದರೂ ಇದ್ದಲ್ಲಿ,

– ಇವುಗಳ ಬಗ್ಗೆ ವಿಶ್ವವಿದ್ಯಾಲಯದ ನಿಯತಕಾಲಿಕ ಪರಿವೀಕ್ಷಣೆಯನ್ನು ನಡೆಸತಕ್ಕದ್ದು ಮತ್ತು ಸರ್ಕಾರಕ್ಕೆ ವರದಿಯನ್ನು ಕಳುಹಿಸತಕ್ಕದ್ದು.

(3) ದುರ್ವ್ಯವಹರಣೆ, ದುರಾಡಳಿತ ಮತ್ತು ಅಶಿಸ್ತು ಆಗಿದೆ ಎಂಬುದನ್ನು ಗುರುತಿಸಿದರೆ, ಸರ್ಕಾರವು, ವಿಶ್ವವಿದ್ಯಾಲಯದ ಆಡಳಿತವರ್ಗದವರಿಗೆ ಆಡಳಿತವನ್ನು ಸರಿಪಡಿಸಬೇಕೆಂದು ನಿರ್ದೇಶನಗಳನ್ನು ನೀಡತಕ್ಕದ್ದು. ನಿಯಮಿಸಬಹುದಾದ ಅಂಥ ಅವಧಿಯೊಳಗೆ ಆ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುವ ಹಕ್ಕು ಸರ್ಕಾರದಲ್ಲಿ ನಿಹಿತವಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ವಿಧಾನವು, ಸರ್ಕಾರವು ಈ ಸಂಬಂಧದಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು:

ಪರಂತು, ವಿಶ್ವವಿದ್ಯಾಲಯವು ತನ್ನ ಕಾರಣಗಳನ್ನು ಹೇಳಿಕೊಳ್ಳಲು ಸಮಂಜಸ ಅವಕಾಶಗಳನ್ನು ನೀಡಿದ ಹೊರತು ಅಂಥ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

(5) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೋಟಿಸನ್ನು ಸ್ವೀಕರಿಸಿದ ಮೇಲೆ, ಸರ್ಕಾರವು ಸಂಬಂಧಿಸಿದ ನಿಯಂತ್ರಣಾ ಪ್ರಾಧಿಕಾರದೊಡನೆ ಸಮಾಲೋಚಿಸಿ, ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ಅಥವಾ ವ್ಯಾಸಂಗ ಕ್ರಮವನ್ನು ಪರಿಸಮಾಪನಗೊಳಿಸಲು ಉದ್ದೇಶಿಸಿದ ದಿನಾಂಕದಿಂದ, ವಿಶ್ವವಿದ್ಯಾಲಯದಲ್ಲಿ ನಿಯತ ವ್ಯಾಸಂಗ ಕ್ರಮಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕೊನೆಯ ತಂಡ (ಬ್ಯಾಚ್) ತನ್ನ ವ್ಯಾಸಂಗ ಕ್ರಮವನ್ನು ಮುಗಿಸುವವರೆಗೆ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು.

**60. ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು.–** (1) 59ನೇ ಪ್ರಕರಣದ (5)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ಅದರ ಆಡಳಿತಾತ್ಮಕ ವೆಚ್ಚಗಳನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಭರಿಸತಕ್ಕದ್ದು.

(2) ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ವಿಶ್ವವಿದ್ಯಾಲಯದ ವೆಚ್ಚವನ್ನು ಭರಿಸಲು 48, 49, 50 ಮತ್ತು 51ನೇ ಪ್ರಕರಣಗಳ ಅಡಿಯಲ್ಲಿ ಉಲ್ಲೇಖಿಸಲಾದ ನಿಧಿಯು ಸಾಕಷ್ಟು ಇಲ್ಲದಿದ್ದಲ್ಲಿ, ಅಂಥ ವೆಚ್ಚವನ್ನು ಸರ್ಕಾರವು, ವಿಶ್ವವಿದ್ಯಾಲಯದ ಸ್ವತ್ತುಗಳು ಮತ್ತು ಆಸ್ತಿಗಳನ್ನು ವಿಲೇ ಮಾಡುವ ಮೂಲಕ ಭರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಸಮಾಪನೆಯು ದುರ್ವ್ಯವಹರಣೆ ಅಥವಾ ದುರಾಡಳಿತದ ಕಾರಣಗಳಿಗಾಗಿ ಆಗಿದ್ದರೆ, ಸರ್ಕಾರವು ಅಂಥ ದುರ್ವ್ಯವಹಾರಕ್ಕೆ ಅಥವಾ ದುರಾಡಳಿತಕ್ಕೆ ಹೊಣೆಯಾಗಿರುವ ವ್ಯಕ್ತಿಗಳನ್ನು ಗುರುತಿಸುವ ಮತ್ತು ಅವರ ಮೇಲೆ ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ದಂಡನೆಯನ್ನು ವಿಧಿಸಲು ಸ್ವತಂತ್ರವಾಗಿರತಕ್ಕದ್ದು.

**61. ತೊಂದರೆಗಳ ನಿವಾರಣೆಗೆ ಅಧಿಕಾರ.–** (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಅಥವಾ ಆದೇಶದ ಮೂಲಕ ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಐದು ವರ್ಷಗಳು ಮುಕ್ತಾಯವಾದ ತರುವಾಯ ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಅಧಿಸೂಚನೆ ಅಥವಾ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

**62. ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ.**– (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಉಭಯ ಸದನಗಳು ಒಪ್ಪಿದರೆ ತದನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ದತಿಯು ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವನ್ನು ಉಂಟುಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಕೆ.ದ್ವಾರಕನಾಥ್ ಬಾಬು**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) ಪ್ರತಿಗಳು: 300

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೪ಎ<br>Part – IV A | ಬೆಂಗಳೂರು, ಶುಕ್ರವಾರ, ೧೬, ಏಪ್ರಿಲ್, ೨೦೨೧ (ಚೈತ್ರ, ೨೬, ಶಕವರ್ಷ, ೧೯೪೩)<br>BENGALURU, FRIDAY, 16, APRIL, 2021 (CHAITHRA, 26, SHAKAVARSHA, 1943 | ನಂ. ೪೩೬<br>No. 436 |
|---|---|---|

## ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ ಸಚಿವಾಲಯ

## ಅಧಿಸೂಚನೆ

**ಸಂಖ್ಯೆ: ಸಂವ್ಯಶಾಇ 66 ಶಾಸನ 2020, ದಿನಾಂಕ: 16.04.2021**

ವಿದ್ಯಾಶಿಲ್ಪ್ ವಿಶ್ವವಿದ್ಯಾಲಯ ವಿಧೇಯಕ, 2020 ಇದಕ್ಕೆ 2021ರ ಏಪ್ರಿಲ್ ತಿಂಗಳ 15ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2021 ರ ಕರ್ನಾಟಕ ಅಧಿನಿಯಮ ಸಂಖ್ಯೆ: 20 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ (ಭಾಗ IV) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ,-

**2021ರ ಕರ್ನಾಟಕ ಅಧಿನಿಯಮ ಸಂಖ್ಯೆ: 20**

(2021 ರ ಏಪ್ರಿಲ್ ತಿಂಗಳ 16ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ವಿದ್ಯಾಶಿಲ್ಪ್ ವಿಶ್ವವಿದ್ಯಾಲಯ ಅಧಿನಿಯಮ, 2020**

(2021ರ ಏಪ್ರಿಲ್ ತಿಂಗಳ 15ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮೋದನೆಯನ್ನು ಪಡೆಯಲಾಗಿದೆ)

ವಿಜ್ಞಾನಗಳು ಮತ್ತು ಇಂಜಿನಿಯರಿಂಗ್‌ನ ಎಲ್ಲಾ ವಿಭಾಗಗಳು, ಕಲೆ, ವ್ಯವಸ್ಥಾಪನೆ, ವಾಣಿಜ್ಯ, ಇವುಗಳಲ್ಲಿ ಆನ್ವಯಿಕ ವಿಶ್ವವಿದ್ಯಾಲಯ ಶಿಕ್ಷಣವನ್ನು ಪ್ರೋತ್ಸಾಹಿಸಲು ಮತ್ತು ಪ್ರಗತಿಯನ್ನು ಕೈಗೊಳ್ಳಲು ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಿಗಾಗಿ ವಿದ್ಯಾನಿಧಿ ಶೈಕ್ಷಣಿಕ ಟ್ರಸ್ಟ್ ಮೂಲಕ ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದಕ್ಕಾಗಿ ಒಂದು ಅಧಿನಿಯಮ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ವಿಜ್ಞಾನಗಳು ಮತ್ತು ಇಂಜಿನಿಯರಿಂಗ್‌ನ ಎಲ್ಲಾ ವಿಭಾಗಗಳು, ಕಲೆ, ವ್ಯವಸ್ಥಾಪನೆ, ವಾಣಿಜ್ಯ, ಇವುಗಳಲ್ಲಿ ಆನ್ವಯಿಕ ವಿಶ್ವವಿದ್ಯಾಲಯ ಶಿಕ್ಷಣವನ್ನು ಪ್ರೋತ್ಸಾಹಿಸಲು ಮತ್ತು ಪ್ರಗತಿಯನ್ನು ಕೈಗೊಳ್ಳಲು ಹಾಗೂ ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಆನುಷಂಗಿಕವಾದ ವಿಷಯಗಳಿಗಾಗಿ ವಿದ್ಯಾನಿಧಿ ಶೈಕ್ಷಣಿಕ ಟ್ರಸ್ಟ್ ಮೂಲಕ ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ

ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತೊಂದನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**ಅಧ್ಯಾಯ - I**
**ಪ್ರಾರಂಭಿಕ**

**1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ವಿದ್ಯಾಶಿಲ್ಪ ವಿಶ್ವವಿದ್ಯಾಲಯ ಅಧಿನಿಯಮ, 2020 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

2. **ಪರಿಭಾಷೆಗಳು.-** ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು.-

(ಎ) "ಶೈಕ್ಷಣಿಕ ಪರಿಷತ್ತು (ಅಕೆಡೆಮಿಕ್ ಕೌನ್ಸಿಲ್)" ಎಂದರೆ 26ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿಸಲಾದ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು;

(ಬಿ) "ಕಾರ್ಯಸೂಚಿ ವಿಷಯಗಳು" ಎಂದರೆ, ಪರಿನಿಯಮಗಳಲ್ಲಿ ಹೆಸರಿಸಬಹುದಾದ ಮತ್ತು ಒಂದು ಸಭೆಯಲ್ಲಿ ಆ ವಿಷಯಗಳನ್ನು ಮತ್ತು ಕಲಾಪಗಳನ್ನು ಅನುಮೋದಿಸಬಹುದೆಂದು ತಮ್ಮ ಸಮ್ಮತಿ ಸೂಚಿಸಿ ಕುಲಾಧಿಪತಿಯವರು ಮುಂಚಿತವಾಗಿಯೇ ಲಿಖಿತ ಅನುಮೋದನೆಯನ್ನು ಕೊಟ್ಟಿದ್ದಾಗ ಮಾತ್ರವೇ ಸಂದರ್ಭಾನುಸಾರ ಪ್ರಬಂಧಕರ ಮಂಡಳಿ ಅಥವಾ ವ್ಯವಸ್ಥಾಪನಾ ಮಂಡಳಿ ಅಥವಾ ಶೈಕ್ಷಣಿಕ ಪರಿಷತ್ತು ಅಥವಾ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳು ಅಥವಾ ಯಾವುದೇ ಸಮಿತಿಯವರು ಕಾರ್ಯಸೂಚಿಯಲ್ಲಿ ಸೇರಿಸಬಹುದಾದ ಅಥವಾ ಸಭೆಯಲ್ಲಿ ಚರ್ಚೆಗೆ ತೆಗೆದುಕೊಂಡು ನಿರ್ಣಯವನ್ನು ಕೊಡಬಹುದಾದ ಎಲ್ಲಾ ವಿಷಯಗಳು ಮತ್ತು ಕಲಾಪಗಳು;

(ಸಿ) "ಪ್ರಬಂಧಕರ ಮಂಡಳಿ" ಎಂದರೆ, 24ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಪ್ರಬಂಧಕರ ಮಂಡಳಿ;

(ಡಿ) "ವ್ಯವಸ್ಥಾಪನಾ ಮಂಡಳಿ" ಎಂದರೆ 25ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದಂತೆ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿ;

(ಇ) "ಕುಲಾಧಿಪತಿ", "ಕುಲಪತಿ", "ಸಹಕುಲಪತಿ" ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ ಮತ್ತು ಸಹಕುಲಪತಿ;

(ಎಫ್) "ಕ್ಯಾಂಪಸ್" ಎಂದರೆ, ಅದು ರಾಜ್ಯದೊಳಗೆ ಇರುವ ವಿಶ್ವವಿದ್ಯಾಲಯವು ಸ್ಥಾಪಿಸಿದ, ನಿರ್ವಹಿಸುವ ಒಂದು ಕ್ಯಾಂಪಸ್;

(ಜಿ) "ಸಮಿತಿಗಳು" ಎಂದರೆ, ಈ ಅಧಿನಿಯಮದಡಿಯಲ್ಲಿ ರೂಪಿಸಲಾದ ಸಮಿತಿಗಳು ಅಥವಾ ಸಂದರ್ಭಾನುಸಾರವಾಗಿ ವಿಶ್ವವಿದ್ಯಾಲಯದ ವಿವಿಧ ಕಾರ್ಯಕರ್ತರು ರಚಿಸಿರುವ ಸಮಿತಿಗಳು ಮತ್ತು ಅದರಲ್ಲಿ ಶೋಧನಾ ಸಮಿತಿ, ನಾಮನಿರ್ದೇಶನ ಸಮಿತಿ, ಹಣಕಾಸು ಸಮಿತಿ, ಹಣಕಾಸು ಪರಿಷತ್ತು ಮತ್ತು ಅಂಥ ಇತರ ಸಮಿತಿಗಳು ಒಳಗೊಳ್ಳುತ್ತವೆ;

(ಎಚ್) "ಘಟಕ ಕಾಲೇಜು" ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುತ್ತಿರುವ ಒಂದು ಕಾಲೇಜು ಅಥವಾ ಸಂಸ್ಥೆ;

(ಐ) "ಹಣಕಾಸು ಸಮಿತಿ" ಎಂದರೆ, 28ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಹಣಕಾಸು ಸಮಿತಿ;

(ಜೆ) "ಸರ್ಕಾರ" ಎಂದರೆ, ಕರ್ನಾಟಕ ಸರ್ಕಾರ;

(ಕೆ) "ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳು" ಎಂದರೆ, ವಿಶ್ವವಿದ್ಯಾಲಯ ಅನುದಾನ ಆಯೋಗ, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು, ರಾಷ್ಟ್ರೀಯ ಬೋಧಕ ಶಿಕ್ಷಣ ಪರಿಷತ್ತು, ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಪರಿಷತ್ತು, ವಾಸ್ತುಶಿಲ್ಪ ಪರಿಷತ್ತು ಮತ್ತು ಸರ್ಕಾರವನ್ನು ಒಳಗೊಂಡು ಉನ್ನತ ಶಿಕ್ಷಣದಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುವಂತೆ ನೋಡಿಕೊಳ್ಳುವುದಕ್ಕಾಗಿ ಗುಣಮಟ್ಟಗಳು ಮತ್ತು ಷರತ್ತುಗಳನ್ನು ವಿಧಿಸುವುದಕ್ಕಾಗಿ, ಕೇಂದ್ರ ಸರ್ಕಾರವು ಸ್ಥಾಪಿಸಿರುವ ಒಂದು ಸಂಸ್ಥೆ;

(ಎಲ್) "ನಿಯಮಿಸಲಾದುದು" ಎಂದರೆ, ಈ ಅಧಿನಿಯಮದಡಿಯಲ್ಲಿ ಸರ್ಕಾರವು ರಚಿಸಲಾದ ನಿಯಮಗಳ ಮೂಲಕ ನಿಯಮಿಸಲಾದುದು;

(ಎಂ) "ಒಂದು ಘಟಕ ಕಾಲೇಜಿಗೆ ಸಂಬಂಧಪಟ್ಟಂತೆ ಪ್ರಾಂಶುಪಾಲರು" ಎಂದರೆ, ಘಟಕ ಕಾಲೇಜಿನ ಮುಖ್ಯಸ್ಥರು ಮತ್ತು ಪ್ರಾಂಶುಪಾಲರು ಇಲ್ಲದಿದ್ದಲ್ಲಿ ಅಥವಾ ನೇಮಕವಾದ ಪ್ರಾಂಶುಪಾಲರ ಗೈರುಹಾಜರಿಯಲ್ಲಿ, ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ತಾತ್ಕಾಲಿಕವಾಗಿ ನೇಮಕಗೊಂಡಿರುವ ಉಪಪ್ರಾಂಶುಪಾಲರು ಅಥವಾ ಯಾವುದೇ ಇತರ ವ್ಯಕ್ತಿಯೂ ಇದರಲ್ಲಿ ಒಳಗೊಳ್ಳುತ್ತಾರೆ;

(ಎನ್) "ಕುಲಸಚಿವರು" ಎಂದರೆ, ವಿಶ್ವವಿದ್ಯಾಲಯದ ಕುಲಸಚಿವರು;

(ಒ) "ಪ್ರಾದೇಶಿಕ ಕೇಂದ್ರ" ಎಂದರೆ, ರಾಜ್ಯದೊಳಗೆ ಅಧ್ಯಯನ ಕೇಂದ್ರಗಳ ಕಾರ್ಯವನ್ನು ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ಮಾಡುವ ಉದ್ದೇಶಕ್ಕಾಗಿ ಮತ್ತು ಅಂಥ ಕೇಂದ್ರಕ್ಕೆ ಕಾರ್ಯಕಾರಿ ಪರಿಷತ್ತು ವಹಿಸಿಕೊಡಬಹುದಾದ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸುವುದಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಅಥವಾ ನಿರ್ವಹಿಸಿಕೊಂಡುಬರುವ ಒಂದು ಕೇಂದ್ರ;

(ಪಿ) ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ "ಪ್ರಾಯೋಜಕ ಪ್ರಾಧಿಕಾರ" ಅಥವಾ "ಪ್ರಾಯೋಜಕ ಸಂಸ್ಥೆ" ಎಂದರೆ ವಿದ್ಯಾನಿಧಿ ಶೈಕ್ಷಣಿಕ ಟ್ರಸ್ಟ್;

(ಕ್ಯೂ) "ರಾಜ್ಯ" ಎಂದರೆ, ಕರ್ನಾಟಕ ರಾಜ್ಯ;

(ಆರ್) "ಪರಿನಿಯಮಗಳು" ಮತ್ತು "ವಿನಿಯಮಗಳು" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಅನುಕ್ರಮವಾಗಿ ವಿಶ್ವವಿದ್ಯಾಲಯದ ಪರಿನಿಯಮಗಳು ಮತ್ತು ವಿನಿಯಮಗಳು;

(ಎಸ್) "ಅಧ್ಯಯನ ಕೇಂದ್ರ" ಎಂದರೆ, ವಿದ್ಯಾರ್ಥಿಗಳಿಗೆ ಅಗತ್ಯವಾದ ಬುದ್ಧಿವಾದ, ಸಲಹೆಗಳನ್ನು ನೀಡುವ ಅಥವಾ ಇತರ ಯಾವುದೇ ನೆರವನ್ನು ನೀಡುವ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವು ರಾಜ್ಯದೊಳಗೆ ಸ್ಥಾಪಿಸಿದ ಮತ್ತು ನಿರ್ವಹಿಸಿಕೊಂಡುಬಂದ ಒಂದು ಕೇಂದ್ರ;

(ಟಿ) "ಅಧ್ಯಾಪಕರು" ಎಂದರೆ, ಒಬ್ಬ ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಒಂದು ಘಟಕ ಕಾಲೇಜಿನಲ್ಲಿ

ಬೋಧಿಸುವುದಕ್ಕೆ ಅಥವಾ ಸಂಶೋಧನೆ ನಡೆಸುವುದಕ್ಕೆ ಅಥವಾ ಸಂಶೋಧನೆಗೆ ಮಾರ್ಗದರ್ಶನ ನೀಡುವುದಕ್ಕೆ ನೇಮಕವಾದ ಅಂಥ ಇತರ ವ್ಯಕ್ತಿ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗವು ನಿರ್ದಿಷ್ಟಪಡಿಸಿದ ಗುಣಮಟ್ಟಗಳಿಗೆ ಅನುಸಾರವಾಗಿ ಇರುವ ಘಟಕ ಕಾಲೇಜಿನ ಪ್ರಾಂಶುಪಾಲರು ಇದರಲ್ಲಿ ಒಳಗೊಳ್ಳುತ್ತಾರೆ;

(ಯು) "ಟ್ರಸ್ಟ್" ಎಂದರೆ, ಭಾರತೀಯ ಟ್ರಸ್ಟ್ ಅಧಿನಿಯಮ, 1882ರ (1882ರ ಕೇಂದ್ರ ಅಧಿನಿಯಮ 2) ಅಡಿಯಲ್ಲಿ ನೋಂದಾಯಿತವಾದ ವಿದ್ಯಾನಿಧಿ ಶೈಕ್ಷಣಿಕ ಟ್ರಸ್ಟ್;

(ವಿ) "ವಿಶ್ವವಿದ್ಯಾಲಯ" ಎಂದರೆ, " ವಿದ್ಯಾಶಿಲ್ಪ್ ವಿಶ್ವವಿದ್ಯಾಲಯ";

(ಡಬ್ಲ್ಯೂ) "ವಿಶ್ವವಿದ್ಯಾಲಯ ಅನುದಾನಗಳ ಆಯೋಗ" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) 4ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ಆಯೋಗ; ಮತ್ತು

(ಎಕ್ಸ್) "ಸಂದರ್ಶಕರು" ಎಂದರೆ, 13ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ವಿಶ್ವವಿದ್ಯಾಲಯದ ಸಂದರ್ಶಕರು.

## ಅಧ್ಯಾಯ- II
## ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

**3. ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ**.- (1) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಹಕ್ಕನ್ನು ಟ್ರಸ್ಟ್ ಹೊಂದಿರತಕ್ಕದ್ದು.

(2) ಟ್ರಸ್ಟ್ ರಾಜ್ಯ ಸರ್ಕಾರಕ್ಕೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವವನ್ನು ಸಲ್ಲಿಸತಕ್ಕದ್ದು.

(3) ಪ್ರಸ್ತಾವವು ಈ ಮುಂದಿನ ವಿವರಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಟ್ರಸ್ಟ್ ವಿವರಗಳೊಂದಿಗೆ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು;

(ii) ವಿಶ್ವವಿದ್ಯಾಲಯದ ವ್ಯಾಪ್ತಿ ಮತ್ತು ಸ್ಥಾನಮಾನ ಹಾಗೂ ಭೂಮಿಯ ಲಭ್ಯತೆ;

(iii) ಪ್ರಾರಂಭದ ದಿನಾಂಕದಿಂದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳಬೇಕೆಂದಿರುವ ಅಧ್ಯಯನ ಮತ್ತು ಸಂಶೋಧನಾ ಕಾರ್ಯಕ್ರಮಗಳ ಸ್ವರೂಪ ಮತ್ತು ಬಗೆಗಳು;

(iv) ಪ್ರಾರಂಭಿಸಬೇಕೆಂದು ಪ್ರಸ್ತಾಪಿಸಿರುವ ವ್ಯಾಸಂಗ ವಿಭಾಗಗಳು (ಫ್ಯಾಕಲ್ಟಿಗಳು), ಅಧ್ಯಯನ ಕ್ರಮಗಳು ಮತ್ತು ಸಂಶೋಧನೆಗಳ ಸ್ವರೂಪ;

(v) ಕಟ್ಟಡಗಳು, ಸಲಕರಣೆಗಳು ಮತ್ತು ರಚನಾ ಸೌಕರ್ಯಗಳನ್ನು ಒದಗಿಸುವಂಥ ಕ್ಯಾಂಪಸ್ ಅಭಿವೃದ್ಧಿ;

(vi) ಪ್ರಾರಂಭದ ದಿನಾಂಕದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಗಾಗಿ ಬಂಡವಾಳ ವೆಚ್ಚದ ಹಂತಗಳು;

(vii) ಬಾಬುವಾರು ಆವರ್ತಕ ವೆಚ್ಚ, ಆರ್ಥಿಕ ಮೂಲಗಳು ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ತಗಲುವ ಅಂದಾಜು ವೆಚ್ಚ;

(viii) ಸಂಪನ್ಮೂಲ ಸಂಗ್ರಹಣೆಗಾಗಿ ಯೋಜನೆ ಮತ್ತು ಅದಕ್ಕೆ ಬಂಡವಾಳದಿಂದ ತಗಲುವ ವೆಚ್ಚ ಹಾಗೂ ಪ್ರತಿಯೊಂದು ಮೂಲಕ್ಕೂ ಮರು ಸಂದಾಯ ಮಾಡುವ ರೀತಿ;

(ix) ವಿದ್ಯಾರ್ಥಿಗಳಿಂದ ಶುಲ್ಕ ವಸೂಲು ಮಾಡಿ ಆಂತರಿಕವಾಗಿ ನಿಧಿ ಸಂಗ್ರಹಿಸುವ ಯೋಜನೆ, ಸಲಹಾ ಸೇವೆ ಮತ್ತು ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಿಗೆ ಸಂಬಂಧಿಸಿದ ಇತರ ಚಟುವಟಿಕೆಗಳಿಂದ ನಿರೀಕ್ಷಿತ ವರಮಾನಗಳು ಮತ್ತು ಇತರ ನಿರೀಕ್ಷಿತ ವರಮಾನಗಳು;

(x) ಘಟಕವೊಂದಕ್ಕೆ ತಗಲುವ ವೆಚ್ಚದ ವಿವರಗಳು, ಆರ್ಥಿಕವಾಗಿ ದುರ್ಬಲವಾದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕ, ಉಚಿತ ಶಿಕ್ಷಣ (ಫ್ರಿಶಿಪ್) ಮತ್ತು ವಿದ್ಯಾರ್ಥಿ ವೇತನದಲ್ಲಿ ನೀಡುವ ರಿಯಾಯಿತಿ ಅಥವಾ ವಿನಾಯತಿಯ ಪರಿಮಿತಿಯ ವಿವರಗಳನ್ನು ಮತ್ತು ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳಿಗೆ ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳು ಪ್ರಾಯೋಜಿಸಿದ ವಿದ್ಯಾರ್ಥಿಗಳಿಗೆ ಮತ್ತು ಭಾರತವನ್ನುಳಿದು ಇತರ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ವಿಧಿಸತಕ್ಕ ಶುಲ್ಕದ ದರಗಳು ಬೇರೆ ಬೇರೆ ಇದ್ದಲ್ಲಿ ಅವುಗಳನ್ನು ಸೂಚಿಸುವ ಶುಲ್ಕ ರಚನೆಯ ವಿವರಗಳು;

(xi) ಸಂಬಂಧಪಟ್ಟ ವಿದ್ಯಾ ವಿಭಾಗದಲ್ಲಿ ಪ್ರಾಯೋಜಕ ಟ್ರಸ್ಟ್ ದೊರಕಿಸಿಕೊಡಲಿರುವ ವರ್ಷಗಳ ಅನುಭವ ಮತ್ತು ಪರಿಣಿತಿ ಹಾಗೂ ಅದರ ಹಣಕಾಸಿನ ಸಂಪನ್ಮೂಲಗಳು;

(xii) ವಿಶ್ವವಿದ್ಯಾಲಯದಲ್ಲಿರುವ ಅಧ್ಯಯನ ಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕಾಗಿ ಇರುವ ವ್ಯವಸ್ಥೆ;

(xiii) ವಿಶ್ವವಿದ್ಯಾಲಯವು ಸ್ಥಾಪನೆಯಾಗುವುದಕ್ಕೆ ಮೊದಲು ನೆರವೇರಿಸಬೇಕೆಂದು ರಾಜ್ಯ ಸರ್ಕಾರವು ಅಗತ್ಯಪಡಿಸಬಹುದಾದ ಅಂಥ ಇತರ ಷರತ್ತುಗಳ ನೆರವೇರಿಕೆಯ ಹಂತ.

(4) ಟ್ರಸ್ಟ್‌ನಿಂದ ಸ್ವೀಕರಿಸಿದ ಪ್ರಸ್ತಾವಗಳನ್ನು ಪರೀಕ್ಷಿಸಲು ರಾಜ್ಯ ಸರ್ಕಾರವು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಪದನಿಮಿತ್ತ ಸದಸ್ಯರಾದ ಮೂರು ಸದಸ್ಯರುಗಳನ್ನು ಒಳಗೊಂಡ ಒಂದು ಶೋಧನಾ ಸಮಿತಿಯನ್ನು ರಚಿಸತಕ್ಕದ್ದು ಮತ್ತು ಅದು ವಿಶ್ವವಿದ್ಯಾಲಯದ ಸ್ಥಾಪನೆಗೆ ರಾಜ್ಯ ಸರ್ಕಾರಕ್ಕೆ ಶಿಫಾರಸ್ಸನ್ನು ಮಾಡತಕ್ಕದ್ದು.

**4. ವಿಶ್ವವಿದ್ಯಾಲಯದ ಸ್ಥಾಪನೆ.-** (1) ರಾಜ್ಯ ಸರ್ಕಾರವು ಶೋಧನಾ ಸಮಿತಿಯು ಮಾಡಿದ ಶಿಫಾರಸ್ಸುಗಳನ್ನು ಪರಿಶೀಲಿಸಿದ ತರುವಾಯ ಮತ್ತು ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ,-

(i) ಟ್ರಸ್ಟ್ ಸಾಕಷ್ಟು ಮೂಲ ಸೌಕರ್ಯದೊಂದಿಗೆ ವಿಶ್ವವಿದ್ಯಾಲಯವೊಂದನ್ನು ನಡೆಸಲು ಸಮರ್ಥವಾಗಿದೆ ಎಂದು ಅದು ಮನಗಂಡರೆ;

(ii) ಪ್ರದೇಶಕ್ಕನುಸಾರವಾಗಿ ಕೆಳಗೆ ನಿರ್ದಿಷ್ಟ ಪಡಿಸಿದ ವ್ಯಾ ಭೂಮಿಯ ಒಡೆತನವನ್ನು ಹೊಂದಿರತಕ್ಕದ್ದು. ಎಂದರೆ:-

(ಎ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯೊಳಗಿದ್ದರೆ ಇಪ್ಪತ್ತೈದು ಎಕರೆಗಳು;

(ಬಿ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯಿಂದ ಹೊರಗೆ ಇದ್ದು, ಆದರೆ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಪ್ರದೇಶದ ಒಳಗೆ ಇದ್ದರೆ ನಲವತ್ತು ಎಕರೆಗಳು;

(ಸಿ) ಭೂಮಿಯು (ಎ) ಮತ್ತು (ಬಿ) ಖಂಡಗಳಲ್ಲಿ ನಿರ್ದಿಷ್ಟಪಡಿಸಿದ ಸ್ಥಳಗಳನ್ನು ಹೊರತುಪಡಿಸಿದ್ದರೆ ಐವತ್ತು ಎಕರೆಗಳಿಗಿಂತ ಕಡಿಮೆ ಇರತಕ್ಕದ್ದಲ್ಲ.

(iii) ಮೇಲೆ ನಿರ್ದಿಷ್ಟಪಡಿಸಿದ ಭೂಮಿಯು ಏಕ ಘಟಕ (ಸಿಂಗಲ್ ಬ್ಲಾಕ್) ದಲ್ಲಿರತಕ್ಕದ್ದು, ಮತ್ತು ಇದು ಸಂಬಂಧಪಟ್ಟ ಟ್ರಸ್ಟ್ ಅಥವಾ ಸಂಸ್ಥೆ ಅಥವಾ ವಿಶ್ವವಿದ್ಯಾಲಯದ ಹೆಸರಿನಲ್ಲಿರತಕ್ಕದ್ದು. 3ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ಅಗತ್ಯಪಡಿಸಲಾದಂತೆ ಒದಗಿಸಿದ ವಿವರಗಳ ಆಧಾರದ ಮೇಲೆ ಸರ್ಕಾರವು 48ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಬೇಕೆಂದು ನ್ಯಾಸಕ್ಕೆ ನಿರ್ದೇಶನ ನೀಡಬಹುದು;

(iv) ನಿರ್ದಿಷ್ಟಪಡಿಸಿದ ಶಾಸನಬದ್ಧ ನಿಧಿಯನ್ನು ಸೃಜಿಸಲು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳನ್ನು ನಡೆಸಲು ಸಾಕಷ್ಟು ಹಣಕಾಸಿನ ಸಂಪನ್ಮೂಲಗಳು; ಮತ್ತು

(v) ಉನ್ನತ ಶಿಕ್ಷಣ ಸಂಸ್ಥೆಗಳನ್ನು ನಡೆಸುವಲ್ಲಿ ಅನುಭವ ಅಥವಾ ಪರಿಣಿತಿ.

(2) ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಸ್ಥಾಪನೆಯ ತರುವಾಯ, ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, "ವಿದ್ಯಾಶಿಲ್ಪ್ ವಿಶ್ವವಿದ್ಯಾಲಯ" ಎಂಬ ಹೆಸರಿನ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ರಾಜ್ಯದಲ್ಲಿ ಸ್ಥಾಪಿಸುವುದಕ್ಕೆ ಮಂಜೂರಾತಿಯನ್ನು ನೀಡಬಹುದು.

(3) ವಿಶ್ವವಿದ್ಯಾಲಯದ ಕೇಂದ್ರ ಕಾರ್ಯಸ್ಥಾನವು ಬೆಂಗಳೂರಿನಲ್ಲಿ ಇರತಕ್ಕದ್ದು. ವಿಶ್ವವಿದ್ಯಾಲಯದ ಸ್ಥಾಪನೆಯ ಐದು ವರ್ಷಗಳ ತರುವಾಯ ವಿಶ್ವವಿದ್ಯಾಲಯವು ತನ್ನ ಕ್ಯಾಂಪಸ್ಸುಗಳನ್ನು ಅಥವಾ ಪ್ರಾದೇಶಿಕ ಕೇಂದ್ರಗಳನ್ನು, ಅಧ್ಯಯನ ಕೇಂದ್ರಗಳನ್ನು ಕರ್ನಾಟಕದ ಯಾವುದೇ ಭಾಗದಲ್ಲಿ ಹೊಂದಿರತಕ್ಕದ್ದು ಮತ್ತು ಆ ಬಗ್ಗೆ ರಾಜ್ಯ ಸರ್ಕಾರದ ಪೂರ್ವಾನುಮತಿಯನ್ನು ಪಡೆದುಕೊಳ್ಳುವುದಕ್ಕೊಳಪಟ್ಟು ಹಾಗೂ ವಿಶ್ವವಿದ್ಯಾಲಯ ಅನುದಾನಗಳ ಆಯೋಗದ ಗುಣಮಟ್ಟಗಳಿಗನುಸಾರವಾಗಿ ಹೊಂದಿರತಕ್ಕದ್ದು.

(4) ಮೊದಲ ಕುಲಾಧಿಪತಿಯವರು, ಮೊದಲ ಕುಲಪತಿಯವರು, ಪ್ರಬಂಧಕ ಮಂಡಳಿಯ ಮೊದಲ ಸದಸ್ಯರುಗಳು, ವ್ಯವಸ್ಥಾಪನಾ ಮಂಡಳಿಯ ಹಾಗೂ ಶೈಕ್ಷಣಿಕ ಪರಿಷತ್ತಿನ ಮೊದಲ ಸದಸ್ಯರುಗಳು ಮತ್ತು ಇನ್ನು ಮುಂದೆ, ಅಂಥ ಅಧಿಕಾರಿಗಳು ಅಥವಾ ಸದಸ್ಯರುಗಳಾಗಬಹುದಾದಂಥ ಎಲ್ಲಾ ವ್ಯಕ್ತಿಗಳು, ಅಂಥ ಪದ ಅಥವಾ ಸದಸ್ಯತ್ವವನ್ನು ಹೊಂದಿರುವುದು ಮುಂದುವರೆಯುವವರೆಗೆ, ಒಂದು ನಿಗಮಿತ ನಿಕಾಯವನ್ನು ರಚಿಸತಕ್ಕದ್ದು, ಮತ್ತು ಅದು ವಿಶ್ವವಿದ್ಯಾಲಯದ ಹೆಸರಿನಲ್ಲಿ ದಾವೆ ಹೂಡಬಹುದು ಮತ್ತು ದಾವೆಗೊಳಗಾಗಬಹುದು.

(5) (2)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯವು ಸ್ಥಾಪನೆಗೆ ಮಂಜೂರಾತಿಯಾದ ಮೇಲೆ, ವಿಶ್ವವಿದ್ಯಾಲಯದ ಉದ್ದೇಶಕ್ಕಾಗಿ, ನ್ಯಾಸವು ಆರ್ಜಿಸಿದ, ಸೃಜಿಸಿದ, ಏರ್ಪಾಟು ಮಾಡಿಕೊಂಡ ಅಥವಾ ಕಟ್ಟಲ್ಪಟ್ಟ ಭೂಮಿ ಮತ್ತು ಇತರ ಸ್ಥಿರ ಮತ್ತು ಚರ ಸ್ವತ್ತು, ವಿಶ್ವವಿದ್ಯಾಲಯದಲ್ಲಿ ನಿಹಿತವಾಗಿರತಕ್ಕದ್ದು.

(6) ವಿಶ್ವವಿದ್ಯಾಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದ ಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂಥ ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

(7) ವಿಶ್ವವಿದ್ಯಾಲಯದಲ್ಲಿನ ಭೂಮಿ, ಕಟ್ಟಡ ಮತ್ತು ಇತರ ಸ್ವತ್ತುಗಳನ್ನು ವಿಶ್ವವಿದ್ಯಾಲಯದ ಉದ್ದೇಶಗಳಿಗೆ ಆನುಷಂಗಿಕವಾಗಿರುವುದನ್ನು ಹೊರತುಪಡಿಸಿ ಇತರ ಯಾವುದೇ ಉದ್ದೇಶಕ್ಕಾಗಿ ಬಳಸತಕ್ಕದ್ದಲ್ಲ.

5. **ಅನುದಾನಗಳು ಮತ್ತು ಹಣಕಾಸು ನೆರವು**.- ವಿಶ್ವವಿದ್ಯಾಲಯವು ಸ್ವಂತ ಧನಮೂಲವುಳ್ಳ ಲಾಭರಹಿತ ಸಂಸ್ಥೆಯಾಗಿರತಕ್ಕದ್ದು ಮತ್ತು ರಾಜ್ಯದಿಂದ ಅಥವಾ ರಾಜ್ಯದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಇತರ ಸಂಸ್ಥೆ ಅಥವಾ ನಿಗಮದಿಂದ ಯಾವುದೇ ನಿರ್ವಹಣಾ ಸಹಾಯ ಅನುದಾನ ಅಥವಾ ಯಾವುದೇ ಹಣಕಾಸು ನೆರವನ್ನು ಹಕ್ಕಿನಿಂದ ಕೇಳತಕ್ಕದ್ದಲ್ಲ ಅಥವಾ ಅದನ್ನು ಪಡೆಯಲು ಹಕ್ಕನ್ನು ಹೊಂದಿರತಕ್ಕದ್ದಲ್ಲ:

ಪರಂತು, ರಾಜ್ಯವು.-

(ಎ) ಇತರ ರಾಜ್ಯ ಸರ್ಕಾರದ ಸಂಘಟನೆಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿರುವಂಥದ್ದೇ ಸಂಶೋಧನೆ, ಅಭಿವೃದ್ಧಿ ಮತ್ತಿತರ ಚಟುವಟಿಕೆಗಳಿಗಾಗಿ; ಅಥವಾ

(ಬಿ) ರಾಜ್ಯ ಸರ್ಕಾರದಿಂದ ನೆರವನ್ನು ಪಡೆಯುವ ಯಾವುದೇ ನಿರ್ದಿಷ್ಟ ಸಂಶೋಧನೆ ಅಥವಾ ಕಾರ್ಯಕ್ರಮಗಳಿಗಾಗಿ; ಮತ್ತು

(ಸಿ) ರಾಜ್ಯ ಕಾರ್ಯನೀತಿಯ ಬದಲಾವಣೆಗೆ ಒಳಪಟ್ಟು ಅಥವಾ ಅನ್ಯಥಾ ಇದೇ ಬಗೆಯ ವಿಶ್ವವಿದ್ಯಾಲಯಗಳಿಗೆ ಅವಕಾಶವನ್ನು ಕಲ್ಪಿಸುವುದಕ್ಕೆ ಅಥವಾ ಅವುಗಳ ಪ್ರಯೋಜನಕ್ಕಾಗಿ,

- ಅನುದಾನದ ಮೂಲಕ ಅಥವಾ ಅನ್ಯಥಾ ಹಣಕಾಸು ಬೆಂಬಲವನ್ನು ಒದಗಿಸಬಹುದು:

ಮತ್ತು ಪರಂತು, ವಿಶ್ವವಿದ್ಯಾಲಯವು, ಯಾವುದೇ ಇತರ ಮೂಲದಿಂದ ಯಾವುದೇ ಆರ್ಥಿಕ ನೆರವನ್ನು ಸ್ವೀಕರಿಸಬಹುದು.

6. **ಘಟಕ ಕಾಲೇಜು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಅಥವಾ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದಕ್ಕೆ ಅಧಿಕಾರ**.- ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಐದು ವರ್ಷಗಳನ್ನು ಪೂರ್ಣಗೊಳಿಸಿದ ನಂತರ, ವಿಶ್ವವಿದ್ಯಾಲಯ ಅನುದಾನ ಆಯೋಗದ ಮತ್ತು ಇತರ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ಗುಣಮಟ್ಟಗಳಿಗೆ ಒಳಪಟ್ಟು, ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ, ವಿಶ್ವವಿದ್ಯಾಲಯವು, ರಾಜ್ಯದಲ್ಲಿ ತನಗೆ ಸೂಕ್ತವೆನಿಸುವಂಥ ಸ್ಥಳಗಳಲ್ಲಿ ಘಟಕ ಕಾಲೇಜುಗಳು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದಿರಬಹುದು.

7. **ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು**.- ವಿಶ್ವವಿದ್ಯಾಲಯವು, ತನ್ನ ಭವಿಷ್ಯದ್‌ದೃಷ್ಟಿ ಮತ್ತು ಧ್ಯೇಯೋದ್ದೇಶಗಳನ್ನು ಸಾಧಿಸಲು ಈ ಮುಂದಿನಂತೆ ವಿವಿಧ ಬಗೆಯ ಕಾರ್ಯತಂತ್ರಗಳನ್ನು ಕೈಗೊಳ್ಳಬಹುದು:-

(i) ಇತರ ಸಂಬಂಧಿತ ಅಭಿವೃದ್ಧಿ ಕ್ಷೇತ್ರಗಳನ್ನು ಒಳಗೊಂಡಂತೆ ವಿಜ್ಞಾನ, ತಾಂತ್ರಿಕ ಶಿಕ್ಷಣ, ಹಣಕಾಸು, ವ್ಯವಸ್ಥಾಪನೆ, ವಾಣಿಜ್ಯ, ಬೋಧನೆ ಕಲಿಕೆ, ಮುಕ್ತ ಕಲೆಗಳು, ಮಾನವಿಕಗಳು, ಕಲೆ, ವಿವಿಧ ವ್ಯಾಸಂಗ ಕ್ರಮಗಳಲ್ಲಿ ಶಿಕ್ಷಣ, ಬೋಧನೆ ತರಬೇತಿ, ಸಂಶೋಧನೆ, ಸಮಾಲೋಚನೆ ಮತ್ತು ಅಭಿವೃದ್ಧಿಯನ್ನು ಕಲ್ಪಿಸುವುದು ಹಾಗೂ ಈ ಕ್ಷೇತ್ರಗಳಲ್ಲಿ ಸಂಶೋಧನೆ, ಪ್ರಗತಿ ಮತ್ತು ಜ್ಞಾನ ಪ್ರಸಾರಕ್ಕೆ ಉಪಬಂಧಗಳನ್ನು ಕಲ್ಪಿಸುವುದು;

(ii) ಉನ್ನತ ಮತ್ತು ವೃತ್ತಿ ಶಿಕ್ಷಣದಲ್ಲಿ ಬೋಧಕರಿಗಾಗಿ, ಆಡಳಿತಗಾರರಿಗಾಗಿ ಹಾಗೂ ಸರ್ಕಾರಿ, ಸಾರ್ವಜನಿಕ ಮತ್ತು ಖಾಸಗಿ ವಲಯದಲ್ಲಿ ಕೆಲಸ ಮಾಡುವ ವೃತ್ತಿನಿರತರಿಗಾಗಿ ಮತ್ತು ಇತರ ವ್ಯವಸ್ಥೆಗಳಲ್ಲಿನ ಅಭಿವೃದ್ಧಿ ವೃತ್ತಿ ನಿರತರಿಗಾಗಿ ಉನ್ನತ ಗುಣಮಟ್ಟದ ತರಬೇತಿ, ಸಾಮರ್ಥ್ಯ ವೃದ್ಧಿ ಹಾಗೂ ಬೆಳವಣಿಗೆ ವ್ಯವಸ್ಥೆಗಳನ್ನು ವಿನ್ಯಾಸಗೊಳಿಸುವುದು ಮತ್ತು ಪ್ರಚುರಪಡಿಸುವುದು ;

(iii) ಗುಣಮಟ್ಟದ ಶಿಕ್ಷಣಕ್ಕೆ ಕೊಡುಗೆಯನ್ನು ನೀಡಲು ಸಂಪನ್ಮೂಲ ಕೇಂದ್ರಗಳನ್ನು ಅಭಿವೃದ್ಧಿಪಡಿಸುವುದು;

(iv) ಕ್ಯಾಂಪಸ್‌ಗಳನ್ನು ಸ್ಥಾಪಿಸುವುದು ಮತ್ತು ಐದು ವರ್ಷಗಳ ತರುವಾಯ ಕರ್ನಾಟಕದ ಹಲವು ಸ್ಥಳಗಳಲ್ಲಿ ಅಧ್ಯಯನ ಕೇಂದ್ರಗಳು, ಘಟಕ ಕಾಲೇಜುಗಳು ಮತ್ತು ಪ್ರಾದೇಶಿಕ ಕೇಂದ್ರಗಳನ್ನು ಹೊಂದುವುದು ಹಾಗೂ ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ವಿಶ್ವವಿದ್ಯಾಲಯ ಅನುದಾನಗಳ ಆಯೋಗದ ರೂಢಿಗಳ ಅನುಸಾರವಾಗಿ ತಾಂತ್ರಿಕ ಮತ್ತು ವೃತ್ತಿ ಶಿಕ್ಷಣ ಹಾಗೂ ಸಾಮಾಜಿಕ ಮತ್ತು ಮಾನವ ಅಭಿವೃದ್ಧಿಗಳಲ್ಲಿ ಶೈಕ್ಷಣಿಕ ಬದಲಾವಣೆಗಾಗಿ ಕೊಡುಗೆ ನೀಡುವುದು ಮತ್ತು ಅದರ ಅರ್ಥಸುವಿಕೆಯನ್ನು ಅಭಿವೃದ್ಧಿಗೊಳಿಸುವುದು;

(v) ಮೌಲ್ಯಮಾಪನದ ವಿವಿಧ ವಿಧಾನಗಳ ಮೂಲಕ ಮಾಡಿದ ಮೌಲ್ಯಮಾಪನಕ್ಕೆ ಅನುಸಾರವಾಗಿ ಶಿಕ್ಷಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದುದರ ಆಧಾರದ ಮೇಲೆ ಪದವಿಗಳನ್ನು, ಡಿಪ್ಲೋಮೋಗಳನ್ನು, ಪ್ರಮಾಣಪತ್ರಗಳನ್ನು ಮತ್ತು ಯಶೋಪತ್ರ ಪ್ರದಾನದಂಥ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(vi) ವಿದ್ಯಾರ್ಥಿಗಳಿಗೆ, ಬೋಧಕ ವೃಂದದ (ಫ್ಯಾಕಲ್ಟಿ) ಸದಸ್ಯರಿಗೆ ಮತ್ತು ಇತರರಿಗೆ ನಿರ್ದಿಷ್ಟ ಶೈಕ್ಷಣಿಕ ಮತ್ತು ಸಂಶೋಧನಾ ಕಾರ್ಯಕ್ರಮಗಳನ್ನು, ತರಬೇತಿ ಕಾರ್ಯಕ್ರಮಗಳನ್ನು ಮತ್ತು ವಿನಿಮಯ ಕಾರ್ಯಕ್ರಮಗಳನ್ನು ಪರಿಕಲ್ಪಿಸಲು, ವಿನ್ಯಾಸಗೊಳಿಸಲು, ಅಭಿವೃದ್ಧಿಪಡಿಸಲು ಇತರ ಯಾವುದೇ ವಿಶ್ವವಿದ್ಯಾಲಯಗಳು, ಸಂಶೋಧನಾ ಸಂಸ್ಥೆಗಳು, ಲಾಭರಹಿತ ಸಂಸ್ಥೆಗಳು, ಕೈಗಾರಿಕಾ ಸಂಸ್ಥೆಗಳು, ವೃತ್ತಿಪರ ಸಂಸ್ಥೆಗಳು ಅಥವಾ ಇತರ ಸಂಸ್ಥೆಗಳೊಂದಿಗೆ ಸಹಯೋಗವನ್ನು ಹೊಂದುವುದು;

(vii) ಉಪನ್ಯಾಸ ಮಾಲಿಕೆಗಳು, ವಿಚಾರ ಸಂಕಿರಣಗಳು, ಸಮ್ಮೇಳನಗಳು, ಕಾರ್ಯಾಗಾರ ಶಿಕ್ಷಣ ಕಾರ್ಯಕ್ರಮಗಳು, ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳು, ಪ್ರಕಟಣೆಗಳು ಮತ್ತು ತರಬೇತಿ ಕಾರ್ಯಕ್ರಮಗಳು ಮತ್ತು ಕಾರ್ಯಸೂಚಿಗಳ ಮೂಲಕ ಜ್ಞಾನ ಪ್ರಸಾರ ಮಾಡುವುದು ಮತ್ತು ಶಿಕ್ಷಣ ಮತ್ತು ತತ್ಸಂಬಂಧಿತ ಅಭಿವೃದ್ಧಿ ಕ್ಷೇತ್ರಗಳ ವಿಷಯಗಳ ಬಗ್ಗೆ ಸಾರ್ವಜನಿಕ ಚರ್ಚೆಯನ್ನು ಏರ್ಪಡಿಸುವುದು;

(viii) ರಾಜ್ಯ ಸರ್ಕಾರದ ಪೂರ್ವ ಅನುಮತಿಯೊಂದಿಗೆ, ಉತ್ತಮ ಗುಣಮಟ್ಟದ ಇತರ ಯಾವುವೇ ಸಂಸ್ಥೆಗಳೊಂದಿಗೆ ಸಹಭಾಗಿಗಳಾಗಿ ವಿಶ್ವವಿದ್ಯಾಲಯದ ಬೋಧಕ ವೃಂದ (ಫ್ಯಾಕಲ್ಟಿ) ಮತ್ತು ಸಂಶೋಧಕರ ಅಭಿವೃದ್ಧಿ ಮತ್ತು ತರಬೇತಿಗಾಗಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು;

(ix) ರಾಜ್ಯ ಸರ್ಕಾರದ ಪೂರ್ವ ಅನುಮೋದನೆಯೊಡನೆ, ಯಾವುದೇ ಸಂಸ್ಥೆಯೊಂದಿಗೆ ಸಹಯೋಗ ಹೊಂದಿ ಸಂಶೋಧನೆಯನ್ನು ಮತ್ತು ಹೊಸತನವನ್ನು ಬೆಳಕಿಗೆ ತರುವುದು;

(x) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದಕ್ಕಾಗಿ ಮತ್ತು ಉತ್ತೇಜಿಸುವುದಕ್ಕಾಗಿ ಅವಶ್ಯಕವಾದ ಮತ್ತು ಯುಕ್ತವಾದ ಕ್ರಮಗಳನ್ನು ಕೈಗೊಳ್ಳುವುದು;

(xi) ಶಿಕ್ಷಣ ಮತ್ತು ಇತರ ಅಭಿವೃದ್ಧಿ ವಲಯಗಳನ್ನು ವಿಸ್ತರಿಸುವುದಕ್ಕಾಗಿ ಸರ್ಕಾರವು ಅನುಮೋದಿಸಬಹುದಾದಂತೆ ಯಾವುವೇ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದು.

**8. ವಿಶ್ವವಿದ್ಯಾಲಯದ ಅಧಿಕಾರಗಳು.-** ವಿಶ್ವವಿದ್ಯಾಲಯವು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗೆ ಅನುಸಾರವಾಗಿ ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿರ್ಧರಿಸಬಹುದಾದಂತೆ ವಿಶ್ವವಿದ್ಯಾಲಯದ ಸ್ಥಾಪನೆಯ ದಿನಾಂಕದಿಂದ ಐದು ವರ್ಷಗಳ ತರುವಾಯ ಕ್ಯಾಂಪಸ್ಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಕರ್ನಾಟಕದಲ್ಲಿ ಸ್ಥಾಪಿಸುವುದು ಮತ್ತು ನಿರ್ವಹಿಸುವುದು;

(ii) ವಿಶ್ವವಿದ್ಯಾಲಯದ ಉದ್ದೇಶವನ್ನು ಕಾರ್ಯರೂಪಕ್ಕೆ ತರುವಲ್ಲಿ ಅಗತ್ಯವಾಗಬಹುದಾದ ಅಥವಾ ಕಾರ್ಯಸಾಧ್ಯವಾಗಬಹುದಾದ ಎಲ್ಲಾ ಅಂಥ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು;

(iii) ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಮತ್ತು ಷರತ್ತುಗಳಿಗೊಳಪಟ್ಟು ಪದವಿಗಳು ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರದಾನಮಾಡುವುದು;

(iv) ಪರಿನಿಯಮಗಳನ್ವಯ ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿ ವೇತನಗಳು ಮತ್ತು ಬಹುಮಾನಗಳು, ಅವಾರ್ಡುಗಳು, ಪಾರಿತೋಷಕಗಳು ಇತ್ಯಾದಿಗಳನ್ನು ಸ್ಥಾಪಿಸುವುದು ಮತ್ತು ನೀಡುವುದು;

(v) ಪರಿನಿಯಮಗಳಲ್ಲಿ ಅಥವಾ ಸಂದರ್ಭಾನುಸಾರವಾಗಿ ನಿಯಮಗಳಲ್ಲಿ ನಿಗದಿಪಡಿಸಬಹುದಾದ ಅಂಥ ಶುಲ್ಕಗಳು, ಬಿಲ್ಲುಗಳು, ಖರೀದಿ ಪಟ್ಟಿಗಳನ್ನು ಕೇಳಿಪಡೆದುಕೊಳ್ಳುವುದು ಮತ್ತು ಸ್ವೀಕರಿಸುವುದು ಹಾಗೂ ಚಾರ್ಜುಗಳನ್ನು ವಸೂಲು ಮಾಡುವುದು;

(vi) ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಪಠ್ಯೇತರ ಚಟುವಟಿಕೆಗಳಿಗೆ ಅವಕಾಶಗಳನ್ನು ಕಲ್ಪಿಸುವುದು;

(vii) ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ ಕ್ಯಾಂಪಸುಗಳ, ಪ್ರಾದೇಶಿಕ ಕೇಂದ್ರಗಳ, ಅಧ್ಯಯನ ಕೇಂದ್ರಗಳ ಫ್ಯಾಕಲ್ಟಿ, ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವುದು;

(viii) ವಿಶ್ವವಿದ್ಯಾಲಯದ ಅಥವಾ ಒಂದು ಘಟಕ ಕಾಲೇಜಿನ ಅಥವಾ ಕ್ಯಾಂಪಸ್ಸಿನ, ಪ್ರಾದೇಶಿಕ ಕೇಂದ್ರದ ಮತ್ತು ಅಧ್ಯಯನ ಕೇಂದ್ರದ ಉದ್ದೇಶಕ್ಕಾಗಿ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದಿರುವ, ಯಾವುದೇ ರೀತಿಯ ಸ್ವಯಂ ದೇಣಿಗೆಗಳು ಮತ್ತು ಕೊಡುಗೆಗಳನ್ನು ಸ್ವೀಕರಿಸುವುದು ಮತ್ತು ನ್ಯಾಸ ಮತ್ತು ದತ್ತಿ ಸ್ವತ್ತುಗಳೂ ಸೇರಿದಂತೆ, ಯಾವುದೇ ಚರ ಅಥವಾ ಸ್ಥಿರ ಸ್ವತ್ತನ್ನು ಆರ್ಜಿಸುವುದು, ಹೊಂದಿರುವುದು, ನಿರ್ವಹಿಸುವುದು, ನಡೆಸುವುದು ಮತ್ತು ಹಸ್ತಾಂತರ ಮಾಡುವುದು;

(ix) ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸಿಕೊಂಡು ಬರುವುದು ಹಾಗೂ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ ವಿದ್ಯಾರ್ಥಿಗಳಿಗೆ ವಸತಿ ಸ್ಥಳಗಳಾಗಿ ಮಾನ್ಯತೆ ನೀಡುವುದು;

(x) ವಸತಿಯ ಮೇಲ್ವಿಚಾರಣೆ ಮಾಡುವುದು ಮತ್ತು ನಿಯಂತ್ರಣ ಮಾಡುವುದು ಹಾಗೂ ವಿದ್ಯಾರ್ಥಿಗಳು ಮತ್ತು ಎಲ್ಲಾ ಪ್ರವರ್ಗಗಳ ಸಿಬ್ಬಂದಿಗಳಲ್ಲಿ ಶಿಸ್ತು ನಿಯಂತ್ರಣ ಮಾಡುವುದು ಮತ್ತು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ನಡತೆ ಸಂಹಿತೆಯನ್ನು ರೂಪಿಸುವುದೂ ಒಳಗೊಂಡಂತೆ, ಅಂಥ ಸಿಬ್ಬಂದಿಗಳ ಸೇವಾಷರತ್ತುಗಳನ್ನು ನಿರೂಪಿಸುವುದು;

(xi) ಶೈಕ್ಷಣಿಕ, ಆಡಳಿತಾತ್ಮಕ ಮತ್ತು ಬೆಂಬಲ ಸಿಬ್ಬಂದಿಯ ಹುದ್ದೆಗಳನ್ನು ಮತ್ತು ಇತರ ಅವಶ್ಯ ಹುದ್ದೆಗಳನ್ನು ಸೃಜಿಸುವುದು;

(xii) ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ಉದ್ದೇಶಗಳಿಗಾಗಿ ಇತರ ವಿಶ್ವವಿದ್ಯಾಲಯಗಳೊಡನೆ ಸಹಕರಿಸುವುದು ಮತ್ತು ಸಹಯೋಗ ಹೊಂದುವುದು;

(xiii) ಶಿಕ್ಷಕರಿಗೆ, ಪಾಠಗಳನ್ನು ರಚಿಸುವವರಿಗೆ, ಮೌಲ್ಯಮಾಪಕರಿಗೆ ಮತ್ತಿತರ ಶೈಕ್ಷಣಿಕ ಸಿಬ್ಬಂದಿಗೆ ಪುನರ್ಮನನ ವ್ಯಾಸಂಗಕ್ರಮಗಳು, ಅಭಿಮುಖ ವ್ಯಾಸಂಗ ಕ್ರಮಗಳು, ಕಾರ್ಯಾಗಾರಗಳು, ವಿಚಾರಗೋಷ್ಠಿಗಳು ಮತ್ತಿತರ ಕಾರ್ಯಕ್ರಮಗಳನ್ನು ಏರ್ಪಡಿಸುವುದು ಮತ್ತು ನಡೆಸುವುದು;

(xiv) ಶೈಕ್ಷಣಿಕ ಪರಿಷತ್ತಿನ ಅನುಮೋದನೆಯೊಂದಿಗೆ ವಿಶ್ವವಿದ್ಯಾಲಯಕ್ಕೆ ಅಥವಾ ಘಟಕ ಕಾಲೇಜಿಗೆ, ಪ್ರಾದೇಶಿಕ ಕೇಂದ್ರಗಳಿಗೆ, ಅಧ್ಯಯನ ಕೇಂದ್ರಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮತ್ತು ಈ ಅಧಿನಿಯಮದಲ್ಲಿ ಕಲ್ಪಿಸಿದ ವ್ಯಾಪ್ತಿಗಿಂತ ಕಡಿಮೆಯಿಲ್ಲದಂತೆ ಕರ್ನಾಟಕದ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮಾನಕ ಗುಣಮಟ್ಟಗಳನ್ನು ನಿರ್ಧರಿಸುವುದು;

(xv) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಕಾರ್ಯರೂಪಕ್ಕೆ ತರಲು ಅವಶ್ಯವಾಗಬಹುದಾದಂಥ ಇತರ ಎಲ್ಲಾ ಕ್ರಮಗಳನ್ನು ಅಥವಾ ಕಾರ್ಯಗಳನ್ನು, ಅವು ಮೇಲೆ ಹೇಳಿದ ಅಧಿಕಾರಗಳಿಗೆ ಪ್ರಾಸಂಗಿಕವಾಗಿರಲಿ ಅಥವಾ ಇಲ್ಲದಿರಲಿ, ಕೈಗೊಳ್ಳುವುದು;

(xvi) ಪರೀಕ್ಷೆಗಳ ಆಧಾರದ ಮೇಲೆ ಅಥವಾ ಸರ್ಕಾರದಿಂದ ಅನುಮೋದಿತವಾದ ಇತರ ಯಾವುದೇ ಮೌಲ್ಯಮಾಪನ ವಿಧಾನದ ಆಧಾರದ ಮೇಲೆ ನೀಡಲು ಪದವಿಗಳು, ಡಿಪ್ಲೋಮಾಗಳು, ಪ್ರಮಾಣಪತ್ರಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಸ್ಥಾಪಿಸುವುದು;

(xvii) ಫಿಲಂಗಳು, ಕ್ಯಾಸೆಟ್‌ಗಳು, ಧ್ವನಿಸುರುಳಿಗಳು, ದೃಶ್ಯಸುರುಳಿಗಳು, ಸಿ.ಡಿ., ವಿ.ಸಿ.ಡಿ. ಮತ್ತು ಇತರ ತಂತ್ರಾಂಶಗಳೂ ಹಾಗೂ ಇತರ ಸಂಬಂಧಿತ ವಿದ್ಯುನ್ಮಾನ ಮತ್ತು ಮುದ್ರಣ ಮಾಧ್ಯಮ ಸೇರಿದಂತೆ ಬೋಧಕ ಸಾಮಗ್ರಿಗಳನ್ನು ತಯಾರಿಸುವುದಕ್ಕಾಗಿ ಅವಕಾಶ ಕಲ್ಪಿಸುವುದು;

(xviii) ಪ್ರಬಂಧಕ ಮಂಡಳಿಯ ಅನುಮೋದನೆಯೊಡನೆ ವಿಶ್ವವಿದ್ಯಾಲಯದ ಉದ್ದೇಶಗಳಿಗಾಗಿ ವಿಶ್ವವಿದ್ಯಾಲಯದ ಸ್ವತ್ತುಗಳನ್ನು ಭದ್ರತೆಯಾಗಿ ನೀಡಿ ಅಥವಾ ನೀಡದೆ ಹಣವನ್ನು ಪಡೆಯುವುದು, ಸಂಗ್ರಹಿಸುವುದು, ಚಂದಾದಾರರಾಗುವುದು ಮತ್ತು ಸಾಲ ಪಡೆಯುವುದು;

(xix) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುದೇ ಇತರ ಶೈಕ್ಷಣಿಕ ಸಂಸ್ಥೆಗಳ ಆಡಳಿತವನ್ನು ವಶಪಡಿಸಿಕೊಳ್ಳುವುದು, ವಹಿಸಿಕೊಳ್ಳುವುದು ಮತ್ತು ನಡೆಸುವುದು;

(xx) ವ್ಯವಸ್ಥಾಪನಾಮಂಡಳಿಯ ಪೂರ್ವಾನುಮೋದನೆಯೊಂದಿಗೆ ಸ್ವತ್ತುಗಳನ್ನು ಆರ್ಜಿಸುವುದು;

(xxi) ವಿಶ್ವವಿದ್ಯಾಲಯದ ಮೇಲಿನ ಉದ್ದೇಶಗಳಿಗೆ ಸಂಬಂಧಿಸಿದ ಅಥವಾ ಪ್ರಾಸಂಗಿಕವಾದ ಯಾವುದೇ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು.

**9. ವಿಶ್ವವಿದ್ಯಾಲಯವು ಎಲ್ಲಾ ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲರಿಗೂ ಮುಕ್ತವಾಗಿರತಕ್ಕದ್ದು.**- ವಿಶ್ವವಿದ್ಯಾಲಯದ ಪ್ರವೇಶಗಳು ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲಾ ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು. ಎಲ್ಲಾ ಪ್ರವೇಶಗಳನ್ನು ಅರ್ಹತಾ ಪರೀಕ್ಷೆಗಳಲ್ಲಿನ ಅರ್ಹತೆಯ ಆಧಾರದ ಮೇಲೆ ಮಾಡತಕ್ಕದ್ದು:

ಪರಂತು, ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳ ಪ್ರವೇಶದಲ್ಲಿ ಶೇಕಡಾ ನಲವತ್ತರಷ್ಟನ್ನು ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ಮೀಸಲಿಡತಕ್ಕದ್ದು ಮತ್ತು ಪ್ರವೇಶಗಳನ್ನು ರಾಜ್ಯ ಸರ್ಕಾರವು ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡತಕ್ಕದ್ದು.

ಮತ್ತು ಸೀಟುಗಳನ್ನು ಅರ್ಹತ ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ರೂಪಿಸುವ ಮೀಸಲಾತಿ ನೀತಿಗೆ ಅನುಸಾರವಾಗಿ ಹಂಚಿಕೆ ಮಾಡತಕ್ಕದ್ದು:

ಮತ್ತು ಪರಂತು, ಯಾವುದೇ ಕೋರ್ಸಿನಲ್ಲಿ ಹತ್ತಕ್ಕಿಂತ ಕಡಿಮೆ ಸೀಟುಗಳು ಇರುವಲ್ಲಿ, ಸ್ನಾತಕೋತ್ತರ ಇಂಥ ಕೋರ್ಸುಗಳನ್ನು ಒಟ್ಟಿಗೆ ಒಂದುಗೂಡಿಸುವ ಮೂಲಕ ಮೀಸಲಿಡತಕ್ಕದ್ದು ಮತ್ತು ಯಾವುದೇ ಕೋರ್ಸಿನಲ್ಲಿ ಮೂರು ಸೀಟುಗಳಿಗಿಂತ ಕಡಿಮೆ ಇರುವಲ್ಲಿ, ಅವುಗಳನ್ನು ಸರದಿ ಸುತ್ತಿನಲ್ಲಿ ಮೀಸಲಿಡತಕ್ಕದ್ದು.

**10. ರಾಷ್ಟ್ರೀಯ ಅಧಿಮಾನ್ಯತೆ.-** ವಿಶ್ವವಿದ್ಯಾಲಯವು ಪ್ರಾರಂಭವಾದ ತರುವಾಯ ಆದಷ್ಟು ಬೇಗನೆ ಸಂಬಂಧಪಟ್ಟ ಶಾಸನಾತ್ಮಕ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳಿಂದ ಅಧಿಮಾನ್ಯತೆಯನ್ನು ಕೋರತಕ್ಕದ್ದು ಮತ್ತು ಖಾಸಗಿ ವಿಶ್ವವಿದ್ಯಾಲಯಗಳು ನಡೆಸುವ ಎಲ್ಲಾ ವ್ಯಾಸಂಗ ಕ್ರಮಗಳು ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ವಿನಿಯಮಗಳಿಗೆ ಅನುಸಾರವಾಗಿ ಇರತಕ್ಕದ್ದು.

**11. ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು.-** ಪ್ರಾಯೋಜಕ ಸಂಸ್ಥೆಯು ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದಂತೆ ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು. ಇವುಗಳಲ್ಲಿ ಪ್ರತಿಯೊಂದನ್ನು ಪ್ರಾಯೋಜಕ ಸಂಸ್ಥೆಯು ತನ್ನ ವಿವೇಚನಾನುಸಾರ ಚಲಾಯಿಸಬಹುದು, ಎಂದರೆ:-

(i) ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಪುನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(ii) ವಿಶ್ವವಿದ್ಯಾಲಯದ ಪ್ರಥಮ ಪ್ರಬಂಧಕ ಮಂಡಳಿಯನ್ನು ರಚಿಸುವುದು;

(iii) ಪ್ರಬಂಧಕ ಮಂಡಳಿಯ ಸದಸ್ಯರಾಗಿ ಮೂರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(iv) ವ್ಯವಸ್ಥಾಪನಾ ಮಂಡಳಿಯ ಸದಸ್ಯರಾಗಿ ಇಬ್ಬರು ವ್ಯಕ್ತಿಗಳನ್ನು ನಾಮ ನಿರ್ದೇಶಿಸುವುದು;

(v) ವಿಶ್ವವಿದ್ಯಾಲಯದ ದತ್ತಿ ನಿಧಿಗೆ ದೇಣಿಗೆ ನೀಡಲು ನಿಧಿ ಮೂಲಗಳನ್ನು ನಿರ್ಧರಿಸುವುದು;

(vi) ವಿಶ್ವವಿದ್ಯಾಲಯದ ಹಣದ ವಿನಿಯೋಗ ಮತ್ತು ವೆಚ್ಚ ಮಾಡುವುದನ್ನು ನಿರ್ಧರಿಸುವುದು;

(vii) ಈ ಅಧಿನಿಯಮದಲ್ಲಿ ಉಪಬಂಧಿಸಿರುವ ವಿಧಾನದಲ್ಲಿ ಪ್ರಬಂಧಕ ಮಂಡಳಿಯ ಸಭೆಯಲ್ಲಿಯ ವಿವಾದಗಳನ್ನು ಬಗೆಹರಿಸುವುದು.

## ಅಧ್ಯಾಯ - III
## ವಿಶ್ವವಿದ್ಯಾಲಯದ ಅಧಿಕಾರಿಗಳು

**12. ವಿಶ್ವವಿದ್ಯಾಲಯದ ಅಧಿಕಾರಿಗಳು.-** ಈ ಮುಂದಿನವರು ವಿಶ್ವವಿದ್ಯಾಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:-

(i) ಸಂದರ್ಶಕರು;

(ii) ಸಹ-ಸಂದರ್ಶಕರು;

(iii) ಕುಲಾಧಿಪತಿಗಳು;

(iv) ಸಹ-ಕುಲಾಧಿಪತಿಗಳು.

(v) ಕುಲಪತಿಗಳು;

(vi) ಸಹಕುಲಪತಿಗಳು;

(vii) ಫ್ಯಾಕಲ್ಟಿಯ ಡೀನ್ ಗಳು;

(viii) ಕುಲಸಚಿವರು;

(ix) ಹಣಕಾಸು ಅಧಿಕಾರಿ; ಮತ್ತು

(x) ಪರಿನಿಯಮಗಳ ಮೂಲಕ ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಘೋಷಿಸಬಹುದಾದಂಥ ಇತರ ಅಧಿಕಾರಿಗಳು.

**13. ಸಂದರ್ಶಕರು.-** (1) ಕರ್ನಾಟಕದ ಘನತೆವೆತ್ತ ರಾಜ್ಯಪಾಲರು ವಿಶ್ವವಿದ್ಯಾಲಯದ ಸಂದರ್ಶಕರಾಗಿರತಕ್ಕದ್ದು ಮತ್ತು ಸಂದರ್ಶಕರು ವಿಶ್ವವಿದ್ಯಾಲಯದ ಕಾರ್ಯನಿರ್ವಹಣೆಯ ಸುಧಾರಣೆಗಾಗಿ ಸಲಹೆಗಳನ್ನು ನೀಡಬಹುದು.

(2) ಸಂದರ್ಶಕರು, ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಸಂದರ್ಶಕರು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ವ್ಯವಹಾರಗಳಿಗೆ ಸಂಬಂಧಿಸಿದಂತೆ, ಯಾವುದೇ ಪತ್ರ ಅಥವಾ ಮಾಹಿತಿಯನ್ನು ತರಿಸಿಕೊಳ್ಳುವುದು.

(ii) ಸಂದರ್ಶಕರು, ಅವರು ಸ್ವೀಕರಿಸಿದ ಮಾಹಿತಿಯ ಆಧಾರದ ಮೇಲೆ ವಿಶ್ವವಿದ್ಯಾಲಯಗಳ ಯಾವುದೇ ಪ್ರಾಧಿಕಾರವು ಮಾಡಿದ ಯಾವುದೇ ಆದೇಶ, ನಡೆಸಿದ ವ್ಯವಹರಣೆಗಳು ಅಥವಾ ಕೈಗೊಂಡ ತೀರ್ಮಾನಗಳು, ಈ ಅಧಿನಿಯಮ, ವಿನಿಯಮಗಳು ಅಥವಾ ನಿಯಮಗಳಿಗೆ ಪೂರಕವಾಗಿಲ್ಲವೆಂದು ಮನಗಂಡರೆ ಅವರು ವಿಶ್ವವಿದ್ಯಾಲಯದ ಹಿತಾಸಕ್ತಿಯಿಂದ ತಾವು ಸೂಕ್ತವೆಂದು ಭಾವಿಸಬಹುದಾದಂಥ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಹಾಗೆ ಹೊರಡಿಸಿದ ನಿರ್ದೇಶನಗಳನ್ನು ಸಂಬಂಧಪಟ್ಟವರೆಲ್ಲರೂ ಪಾಲಿಸತಕ್ಕದ್ದು.

**14. ಸಹ-ಸಂದರ್ಶಕರು.-** (1) ಕರ್ನಾಟಕ ಸರ್ಕಾರದ ಮಾನ್ಯ ಉನ್ನತ ಶಿಕ್ಷಣ ಸಚಿವರು ವಿಶ್ವವಿದ್ಯಾಲಯದ ಸಹ-ಸಂದರ್ಶಕರಾಗಿರತಕ್ಕದ್ದು.

(2) ಸಂದರ್ಶಕರ ಅನುಪಸ್ಥಿತಿಯಲ್ಲಿ ಸಹ-ಸಂದರ್ಶಕರು ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**15. ಕುಲಾಧಿಪತಿಗಳು.-** (1) ಕುಲಾಧಿಪತಿಯವರನ್ನು ಪ್ರಾಯೋಜಕ ಸಂಸ್ಥೆಯು ನೇಮಿಸತಕ್ಕದ್ದು.

(2) ಪ್ರಾಯೋಜಕ ಸಂಸ್ಥೆಯ ಪ್ರಸ್ತುತ ಅಧ್ಯಕ್ಷರು ಮೊದಲನೇ ಕುಲಾಧಿಪತಿಗಳಾಗಿರತಕ್ಕದ್ದು, ಅವರು ತಮ್ಮ ಜೀವನಪರ್ಯಂತ ಅಥವಾ ಅವರು ತಮ್ಮ ಪದವನ್ನು ಬಿಟ್ಟುಕೊಡುವವರೆಗೆ ಕುಲಾಧಿಪತಿಗಳಾಗಿ ಪದಧಾರಣ ಮಾಡಿರತಕ್ಕದ್ದು.

(3) ತದನಂತರದ ಕುಲಾಧಿಪತಿಗಳು ಪ್ರಾಯೋಜಕ ಸಂಸ್ಥೆಯ ಟ್ರಸ್ಟಿಯಾಗಿರತಕ್ಕದ್ದು.

(4) ಪ್ರಾಯೋಜಕ ಸಂಸ್ಥೆಯು ಸಹ-ಕುಲಾಧಿಪತಿಯವರನ್ನು ನೇಮಿಸಬಹುದು ಮತ್ತು ಅವರು ಪ್ರಯೋಜಕ ಸಂಸ್ಥೆಯ ಟ್ರಸ್ಟಿಯಾಗಿರತಕ್ಕದ್ದು.

(5) ಹಾಗೆ ನೇಮಕಗೊಂಡ ತದನಂತರದ ಕುಲಾಧಿಪತಿಗಳು ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ಪದಧಾರಣ ಮಾಡತಕ್ಕದ್ದು.

(6) ಕುಲಾಧಿಪತಿಗಳು ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳ ಅಡಿಯಲ್ಲಿ ಅವರಿಗೆ ಪ್ರದಾನ ಮಾಡಬಹುದಾದಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು. ಅವುಗಳಲ್ಲಿ ಈ ಮುಂದಿನ ಅಧಿಕಾರಗಳು ಒಳಗೊಂಡಿರತಕ್ಕದ್ದು. ಎಂದರೆ:-

(i) ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುವುದು;

(ii) ಸಂದರ್ಶಕರ ಮತ್ತು ಸಹ-ಸಂದರ್ಶಕರಿಬ್ಬರ ಗೈರುಹಾಜರಿಯಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಘಟಿಕೋತ್ಸವಗಳಲ್ಲಿ ಅಧ್ಯಕ್ಷತೆಯನ್ನು ವಹಿಸುವುದು;

(iii) ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವುದು;

(iv) ಈ ಅಧಿನಿಯಮ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಅನುಸಾರವಾಗಿ ಕುಲಪತಿಗಳನ್ನು ನೇಮಿಸುವುದು ಅಥವಾ ಪುನರ್ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(v) ಸಹಕುಲಪತಿಗಳು, ಡೀನ್, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿಗಳ ನೇಮಕಾತಿಯನ್ನು ಪೂರ್ವಾನುಮೋದಿಸುವುದು;

(vi) ಮೊದಲ ಸಹಕುಲಪತಿಗಳು ಮತ್ತು ಹಣಕಾಸು ಅಧಿಕಾರಿಗಳನ್ನು ನೇಮಿಸುವುದು;

(vii) ಮೊದಲ ವ್ಯವಸ್ಥಾಪನಾ ಮಂಡಳಿ, ಹಣಕಾಸು ಸಮಿತಿ, ಸಂಶೋಧನಾ ಪರಿಷತ್ತು ಹಾಗೂ ಶೈಕ್ಷಣಿಕ ಪರಿಷತ್ತುಗಳನ್ನು ರಚಿಸುವುದು;

(viii) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ ಕಾರ್ಯಸೂಚಿ ವಿಷಯಗಳನ್ನು ಪೂರ್ವಾನುಮೋದಿಸುವುದು; ಮತ್ತು

(ix) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ (ಪ್ರಬಂಧಕ ಮಂಡಳಿಯ ಸಭೆಯಲ್ಲಿ ಉಂಟಾದ ವಿವಾದಗಳನ್ನು ಹೊರತುಪಡಿಸಿ) ವಿವಾದಗಳನ್ನು ಪರಿಹರಿಸುವುದು.

(7) ಪದಾಧಿಕಾರಿ ಅಥವಾ ಸಂಸ್ಥೆ ಮತ್ತು ವಿಶ್ವವಿದ್ಯಾಲಯದ ಯಾವುದೇ ಇತರ ಪದಾಧಿಕಾರಿ ಅಥವಾ ಸಂಸ್ಥೆಯ ನಡುವೆ ವಿವಾದಗಳು ಉಂಟಾದಲ್ಲಿ, ಆ ವಿವಾದವನ್ನು ಕುಲಾಧಿಪತಿಯವರ ಪರ್ಯಾಲೋಚನೆಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿವಾದದ ಸಂದರ್ಭದಲ್ಲಿ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**16. ಸಹ-ಕುಲಾಧಿಪತಿಗಳು.-** (1) ಪರಿನಿಯಮಗಳಲ್ಲಿ ನಮೂದಿಸಿರಬಹುದಾದಂತೆ ಇತರ ನಿಬಂಧನೆಗಳು ಮತ್ತು ಷರತ್ತುಗಳಿಗೆ ಒಳಪಟ್ಟು, ಪ್ರಾಯೋಜಕ ಸಂಸ್ಥೆಯ ಮೂಲಕ ನಿಯಮಿಸಬಹುದಾದ ಅವಧಿಗಾಗಿ ಪ್ರಾಯೋಜಕ ಸಂಸ್ಥೆಯು ಸಹ-ಕುಲಾಧಿಪತಿಯವರನ್ನು ನೇಮಕ ಮಾಡತಕ್ಕದ್ದು.

(2) ಕುಲಾಧಿಪತಿಯವರ ಗೈರುಹಾಜರಿಯಲ್ಲಿ ಸಹ-ಕುಲಾಧಿಪತಿಯವರು ಕುಲಾಧಿಪತಿಯವರ ಎಲ್ಲಾ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯೊಂದಿಗೆ ಯಾವುದೇ ಹೆಚ್ಚಿನ ಕರ್ತವ್ಯಗಳನ್ನು ವಹಿಸತಕ್ಕದ್ದು.

(3) ಕುಲಾಧಿಪತಿಯವರ ಗೈರುಹಾಜರಿಯಲ್ಲಿ ಸಹ-ಕುಲಾಧಿಪತಿಯವರು ಎಲ್ಲಾ ಸಮಿತಿಗಳ, ಸಭೆಗಳ ಮತ್ತು ಘಟಿಕೋತ್ಸವಗಳ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**17. ಕುಲಪತಿಗಳು.-** (1) (2)ನೇ ಉಪಪ್ರಕರಣದ ಉಪಬಂಧಗಳಿಗೆ ಅನುಸಾರವಾಗಿ ನಾಮನಿರ್ದೇಶಕ ಸಮಿತಿಯು ಶಿಫಾರಸ್ಸು ಮಾಡಿದ ಮೂರು ವ್ಯಕ್ತಿಗಳ ಪೈಕಿಯಿಂದ ಒಬ್ಬರನ್ನು ಮೂರು ವರ್ಷಗಳ ಅವಧಿಗಾಗಿ ಕುಲಪತಿಗಳನ್ನಾಗಿ, ಪರಿನಿಯಮಗಳಲ್ಲಿ ನಿಯಮಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರು ನೇಮಿಸತಕ್ಕದ್ದು. ಮೂರು ವರ್ಷಗಳ ಅವಧಿಯು ಮುಗಿದ ತರುವಾಯ, ಇದನ್ನು ಮೂರು ವರ್ಷಗಳ ಮತ್ತೊಂದು ಅವಧಿಗೆ ನವೀಕರಿಸಬಹುದು:

ಪರಂತು, ಕುಲಪತಿಯವರು, ತಮ್ಮ ಅವಧಿ ಮುಗಿದ ನಂತರವೂ ಹೊಸ ಕುಲಪತಿಯವರು ಸೇರಿಕೊಳ್ಳುವವರೆಗೆ ಪದದಲ್ಲಿ ಮುಂದುವರೆಯತಕ್ಕದ್ದು. ಆದಾಗ್ಯೂ ಈ ಅವಧಿಯು ಯಾವುದೇ ಸಂದರ್ಭದಲ್ಲಿ ಒಂದು ವರ್ಷವನ್ನು ಮೀರತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಹೇಳಿರುವ ನಾಮನಿರ್ದೇಶಕ ಸಮಿತಿಯಲ್ಲಿ ಈ ಮುಂದಿನ ವ್ಯಕ್ತಿಗಳು ಇರತಕ್ಕದ್ದು, ಎಂದರೆ:-

(i) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಒಬ್ಬ ವ್ಯಕ್ತಿ;

(ii) ಪ್ರಬಂಧಕ ಮಂಡಳಿಯ ಇಬ್ಬರು ನಾಮ ನಿರ್ದೇಶಿತರು, ಇವರಲ್ಲಿ ಒಬ್ಬರನ್ನು ಪ್ರಬಂಧಕ ಮಂಡಳಿಯು ಸಮಿತಿಯ ಸಂಚಾಲಕರೆಂದು ನಾಮನಿರ್ದೇಶಿಸತಕ್ಕದ್ದು.

(3) ನಾಮನಿರ್ದೇಶನ ಸಮಿತಿಯು, ಅರ್ಹತೆಯ ಆಧಾರದ ಮೇಲೆ ಕುಲಪತಿಯ ಹುದ್ದೆಗೆ ಸೂಕ್ತವಾದ ಮೂರು ವ್ಯಕ್ತಿಗಳ ಹೆಸರನ್ನು ಶಿಫಾರಸ್ಸು ಮಾಡತಕ್ಕದ್ದು ಮತ್ತು ಅದನ್ನು ಪ್ರತಿಯೊಬ್ಬ ವ್ಯಕ್ತಿಯ ವಿದ್ಯಾರ್ಹತೆ ಮತ್ತಿತರ ವಿಶಿಷ್ಟ ಪ್ರಶಸ್ತಿಗಳನ್ನು ತಿಳಿಸುವ ಒಂದು ಸಂಕ್ಷಿಪ್ತ ವರದಿಯೊಂದಿಗೆ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು.

(4) ಕುಲಪತಿಯವರು ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಾಹಕ ಮತ್ತು ಶೈಕ್ಷಣಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣವನ್ನು ಚಲಾಯಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯದ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೊಳಿಸತಕ್ಕದ್ದು:

ಪರಂತು, ಶಿಕ್ಷಕರ ನೇಮಕಾತಿಯನ್ನು ಹೊರತುಪಡಿಸಿ ಕೂಡಲೇ ಕ್ರಮವನ್ನು ಕೈಗೊಳ್ಳಬೇಕಾದ ತುರ್ತು ಸ್ವರೂಪದ ಯಾವುದೇ ಇತರ ವಿಷಯಗಳಲ್ಲಿ ಮತ್ತು ಅದನ್ನು ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ವಿಶ್ವವಿದ್ಯಾಲಯವು ಇದಕ್ಕಾಗಿ ಅಧಿಕೃತಗೊಳಿಸಿದ್ದ ಯಾವೊಬ್ಬ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ಇತರ ಸಂಸ್ಥೆಯು ಕೂಡಲೇ ಕ್ರಮಕೈಗೊಳ್ಳುವುದು ಸಾಧ್ಯವಿರದಿರುವಾಗ ಕುಲಪತಿಯವರು ತಾನು ಸೂಕ್ತವೆಂದು ಭಾವಿಸಬಹುದಾದಂತಹ ಕ್ರಮವನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆದು ಕೈಗೊಳ್ಳತಕ್ಕದ್ದು.

(5) ಕುಲಪತಿಯವರು ಪರಿನಿಯಮಗಳು ಅಥವಾ ನಿಯಮಗಳಲ್ಲಿ ಹೇಳಲಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು:

ಪರಂತು, ಕುಲಪತಿಗಳ ಅಭಿಪ್ರಾಯದಲ್ಲಿ, ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಯಾವುದೇ ನಿರ್ಣಯವು, ಈ ಅಧಿನಿಯಮ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳು, ವಿನಿಯಮಗಳು ಅಥವಾ ನಿಯಮಗಳ ಮೂಲಕ ಪ್ರದತ್ತವಾದ ಅಧಿಕಾರದ ಹೊರಗಿದ್ದರೆ ಅಥವಾ ವಿಶ್ವವಿದ್ಯಾಲಯದ ಹಿತಾಸಕ್ತಿಗೆ ಪ್ರತಿಕೂಲವಾಗಬಹುದಾಗಿದ್ದರೆ, ಅದರ ನಿರ್ಣಯದ ದಿನಾಂಕದಿಂದ ಹದಿನೈದು ದಿನಗಳ ಒಳಗೆ ತನ್ನ ನಿರ್ಣಯವನ್ನು ಪರಿಷ್ಕರಿಸಲು ಸಂಬಂಧಪಟ್ಟ ಪ್ರಾಧಿಕಾರವನ್ನು ಆತನು ಕೋರತಕ್ಕದ್ದು ಮತ್ತು ಪ್ರಾಧಿಕಾರವು ಅಂಥ ನಿರ್ಣಯವನ್ನು ಸಂಪೂರ್ಣವಾಗಿ ಅಥವಾ ಭಾಗಶ:ವಾಗಿ ಪರಿಷ್ಕರಿಸಲು ನಿರಾಕರಿಸಿದ ಸಂದರ್ಭದಲ್ಲಿ ಅಥವಾ ಹದಿನೈದು ದಿನಗಳೊಳಗೆ ಯಾವುದೇ ನಿರ್ಣಯವನ್ನು ತೆಗೆದುಕೊಳ್ಳಲು ವಿಫಲವಾದಲ್ಲಿ, ನಂತರ ಅಂಥ ವಿಷಯವನ್ನು ಕುಲಾಧಿಪತಿಗಳಿಗೆ ಕಳುಹಿಸತಕ್ಕದ್ದು ಮತ್ತು ಈ ಬಗ್ಗೆ ಇವರ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

(6) ಕುಲಪತಿಯವರ ಸೇವೆಗಳನ್ನು, ಪ್ರಬಂಧಕ ಮಂಡಳಿಯ ಅನುಮೋದನೆಯೊಂದಿಗೆ ಮತ್ತು ಸಹಜ ನ್ಯಾಯದ ತತ್ವಗಳನ್ನು ಅನುಸರಿಸಿದ ನಂತರ ಹಾಗೂ ಶಿಸ್ತಿನ ಆಧಾರದ ಮೇಲೆ ಅಂತ್ಯಗೊಳಿಸುವ ಸಂದರ್ಭವೂ ಸೇರಿದಂತೆ, ಪ್ರಕರಣದ ಬಗ್ಗೆ ಕುಲಪತಿಯು ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡಿದ ತರುವಾಯ, ಕುಲಾಧಿಪತಿಯವರು ಅಂತ್ಯಗೊಳಿಸಬಹುದು.

(7) ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಸಂದರ್ಶಕರು, ಸಹ-ಸಂದರ್ಶಕರು, ಸಹ-ಕುಲಾಧಿಪತಿಯವರು ಮತ್ತು ಕುಲಾಧಿಪತಿಯವರು ಇವರುಗಳ ಗೈರು ಹಾಜರಿಯ ಸಂದರ್ಭದಲ್ಲಿ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**18. ಸಹಕುಲಪತಿಗಳು.-** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಮೂರು ಜನರನ್ನು ಮೀರದಂತೆ ಸಹಕುಲಪತಿಗಳನ್ನು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**19. ವ್ಯಾಸಂಗ ವಿಭಾಗಗಳ ಡೀನ್‌ಗಳು.-** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಪರಿನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವ್ಯಾಸಂಗ ವಿಭಾಗಗಳ ಡೀನ್‌ಗಳನ್ನು ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**20. ಕುಲಸಚಿವರು.-** (1) ಕುಲಾಧಿಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಸಚಿವರನ್ನು ನೇಮಕ ಮಾಡತಕ್ಕದ್ದು.

(2) ಪರಿನಿಯಮಗಳಲ್ಲಿ ಪರಿಭಾಷಿಸಿರುವಂಥ ಎಲ್ಲಾ ಕರಾರುಗಳನ್ನು ವಿಶ್ವವಿದ್ಯಾಲಯದ ಪರವಾಗಿ ಕುಲಸಚಿವರು ಮಾಡಿಕೊಳ್ಳತಕ್ಕದ್ದು ಮತ್ತು ಅದಕ್ಕೆ ಸಹಿ ಹಾಕತಕ್ಕದ್ದು.

(3) ಕುಲಸಚಿವರು ವಿಶ್ವವಿದ್ಯಾಲಯದ ಪರವಾಗಿ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಪರಿನಿಯಮಗಳಿಂದ ಪ್ರದತ್ತಗೊಳಿಸಬಹುದಾದಂಥ

ಅಥವಾ ಕುಲಾಧಿಪತಿಯವರು ಮತ್ತು ಕುಲಪತಿಯವರು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು ವಿಶ್ವವಿದ್ಯಾಲಯದ ದಾಖಲೆಗಳು ಮತ್ತು ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು, ಕುಲಪತಿಯವರು ಅಥವಾ ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಅಂಥ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿತಕ್ಕದ್ದು.

**21. ಹಣಕಾಸು ಅಧಿಕಾರಿ.-** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು, ಪರಿನಿಯಮಗಳ ಮೂಲಕ ಪ್ರದತ್ತಗೊಳಿಸಬಹುದಾದ ಅಂಥ ವಿಧಾನದಲ್ಲಿ ಹಣಕಾಸು ಅಧಿಕಾರಿಯನ್ನು ನೇಮಕ ಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**22. ಇತರ ಅಧಿಕಾರಿಗಳು.-** ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ ನೇಮಕಾತಿಯ ವಿಧಾನ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಕರ್ತವ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ – IV

## ವಿಶ್ವವಿದ್ಯಾಲಯದ ಪ್ರಾಧಿಕಾರಗಳು

**23. ವಿಶ್ವವಿದ್ಯಾಲಯದ ಪ್ರಾಧಿಕಾರಗಳು.-** ಈ ಮುಂದಿನವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:-

(i) ಪ್ರಬಂಧಕ ಮಂಡಳಿ;

(ii) ವ್ಯವಸ್ಥಾಪನಾ ಮಂಡಳಿ;

(iii) ಶೈಕ್ಷಣಿಕ ಪರಿಷತ್ತು;

(iv) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು;

(v) ಹಣಕಾಸು ಸಮಿತಿ; ಮತ್ತು

(vi) ವಿಶ್ವವಿದ್ಯಾಲಯದ ಪ್ರಾಧಿಕಾರಗಳೆಂದು ಪರಿನಿಯಮಗಳ ಮೂಲಕ ಘೋಷಿಸಬಹುದಾದ ಅಂಥ ಇತರ ಪ್ರಾಧಿಕಾರಗಳು.

**24. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು.-** (1) ಪ್ರಬಂಧಕ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಾಧಿಪತಿಯವರು - ಅಧ್ಯಕ್ಷರು;

(ii) ಸಹ- ಕುಲಾಧಿಪತಿಯವರು - ಸದಸ್ಯರು;

(iii) ಕುಲಪತಿಯವರು - ಸದಸ್ಯರು;

(iv) ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಅಥವಾ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ-ಪದನಿಮಿತ್ತ ಸದಸ್ಯರು;

(v) ರಾಜ್ಯ ಸರ್ಕಾರವು ನಾಮ ನಿರ್ದೇಶನ ಮಾಡಿದ ಆಡಳಿತವನ್ನು ಒಳಗೊಂಡಂತೆ ವ್ಯವಸ್ಥಾಪನೆ, ಹಣಕಾಸು ಅಥವಾ ಯಾವುದೇ ಇತರ ವಿಶೇಷ ಕ್ಷೇತ್ರದಲ್ಲಿನ ಒಬ್ಬರು ತಜ್ಞರು- ಸದಸ್ಯರು;

(vi) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಮೂವರು ವ್ಯಕ್ತಿಗಳು ಅವರ ಪೈಕಿ ಒಬ್ಬರು ಮಹಿಳೆಯಾಗಿರತಕ್ಕದ್ದು- ಸದಸ್ಯರು;

(vii) ಸಹ ಕುಲಪತಿಯವರು ಮತದಾನದ ಹಕ್ಕಿಲ್ಲದ ಸದಸ್ಯರಾಗಿರತಕ್ಕದ್ದು;

(viii) ವಿಶ್ವವಿದ್ಯಾಲಯ ಅನುದಾನ ಆಯೋಗದ ನಾಮನಿರ್ದೇಶಿತ ಒಬ್ಬ ಸುಪ್ರಸಿದ್ಧ ಶಿಕ್ಷಣ ತಜ್ಞರು- ಸದಸ್ಯರು.

(2) ಕುಲಸಚಿವರು ಪ್ರಬಂಧಕ ಮಂಡಳಿಯ ಮತ ದಾನದ ಹಕ್ಕಿರದ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ಪ್ರಬಂಧಕ ಮಂಡಳಿಯ ಸದಸ್ಯರ ಪದಾವಧಿ, ಸರ್ಕಾರದಿಂದ ನಾಮನಿರ್ದೇಶಿತರಾದ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ನೇಮಕಾತಿ, ನವೀಕರಣ ಮತ್ತು ತೆಗೆದುಹಾಕುವುದು ಮುಂತಾದವುಗಳು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಾಧಿಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರ ಗೈರುಹಾಜರಿಯಲ್ಲಿ ಕುಲಾಧಿಪತಿಯವರಿಂದ ನಾಮನಿರ್ದೇಶಿತರಾದ ಯಾರಾದರೂ ಒಬ್ಬರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು. ಅಂಥ ಸಭೆಯ ಅಧ್ಯಕ್ಷತೆಯನ್ನು ವಹಿಸುವುದಕ್ಕೆ ಕುಲಾಧಿಪತಿಯವರು ಯಾವೊಬ್ಬ ವ್ಯಕ್ತಿಯನ್ನೂ ನಾಮನಿರ್ದೇಶನ ಮಾಡಿರದಿದ್ದಲ್ಲಿ, ಸಭೆಯಲ್ಲಿ ಹಾಜರಿರುವ ಸದಸ್ಯರು ಸರಳ ಬಹುಮತದ ಮೂಲಕ ಅವರುಗಳ ಪೈಕಿಯಿಂದಲೇ ಆ ಸಭೆಗೆ ಮಾತ್ರವೇ ಅಧ್ಯಕ್ಷನನ್ನು ಚುನಾಯಿಸತಕ್ಕದ್ದು.

(5) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಿಗೆ, ಅಂಥ ಸಭೆಯಲ್ಲಿ ಹಾಜರಾಗುವ ಮತ್ತು ಮತದಾನ ನೀಡುವ ಮೂರು ಜನ ಸದಸ್ಯರು ಗಣಪೂರ್ತಿ (ಕೋರಂ) ಆಗಿರತಕ್ಕದ್ದು:

ಪರಂತು, ಪ್ರಬಂಧಕ ಮಂಡಳಿಯ ಯಾವುದೇ ಸಭೆಯ ಕೋರಂ ಪೂರ್ಣವಾಗಬೇಕಾದರೆ ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಿರುವುದು ಮತ್ತು ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ನಾಮನಿರ್ದೇಶಿತರು ಹಾಜರಾಗದೇ ಇದ್ದಾಗ ಕುಲಪತಿಯವರು ಹಾಜರಿರುವುದು ಯಾವಾಗಲೂ ಅವಶ್ಯವಾಗಿರತಕ್ಕದ್ದು.

(6) ಪ್ರಬಂಧಕ ಮಂಡಳಿಯು ವಿಶ್ವವಿದ್ಯಾಲಯದ ಪ್ರಧಾನ ಪ್ರಬಂಧಕ ಸಂಸ್ಥೆಯಾಗಿರತಕ್ಕದ್ದು ಮತ್ತು ಅದು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಕಗೊಳಿಸುವುದು;

(ii) ವಿಶ್ವವಿದ್ಯಾಲಯವು ಅನುಸರಿಸಬೇಕಾದ ಕಾರ್ಯನೀತಿಗಳನ್ನು ರಚಿಸುವುದು;

(iii) ಈ ಅಧಿನಿಯಮದ ಅಥವಾ ಪರಿನಿಯಮಗಳ ಅಥವಾ ನಿಯಮಗಳ ಉಪಬಂಧಗಳಿಗೆ ಅನುಗುಣವಾಗಿ ಇರದ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ತೀರ್ಮಾನಗಳನ್ನು ಪುನರೀಕ್ಷಿಸುವುದು;

(iv) ವಿಶ್ವವಿದ್ಯಾಲಯದ ಆಯವ್ಯಯ ಮತ್ತು ವಾರ್ಷಿಕ ವರದಿಗಳನ್ನು ಅನುಮೋದಿಸುವುದು;

(v) ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸುವುದು ಅಥವಾ ಈಗಾಗಲೇ ಇರುವ ಪರಿನಿಯಮಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವುದು ಅಥವಾ ನಿರಸನಗೊಳಿಸುವುದು;

(vi) ವಿಶ್ವವಿದ್ಯಾಲಯವನ್ನು ಸ್ವಯಂಸಮಾಪನಗೊಳಿಸುವ ನಿರ್ಧಾರವನ್ನು ತೆಗೆದುಕೊಳ್ಳುವುದು;

(vii) ಸರ್ಕಾರಕ್ಕೆ ಸಲ್ಲಿಸುವ ಪ್ರಸ್ತಾವಗಳನ್ನು ಅನುಮೋದಿಸುವುದು;

(viii) ಶುಲ್ಕ ನಿಯಂತ್ರಣ ಸಮಿತಿಗೆ ಮೂವರು ಸದಸ್ಯರನ್ನು ನಾಮನಿರ್ದೇಶನ ಮಾಡುವುದು;

(ix) ವಿಶ್ವವಿದ್ಯಾಲಯದ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕೆ ಅಪೇಕ್ಷಣೀಯವೆಂದು ಕಂಡುಬರುವಂಥ ತೀರ್ಮಾನಗಳನ್ನು ಮತ್ತು ಕ್ರಮಗಳನ್ನು ಕೈಗೊಳ್ಳುವುದು.

(7) ಪ್ರಬಂಧಕ ಮಂಡಳಿಯು ಒಂದು ವರ್ಷದಲ್ಲಿ ಕನಿಷ್ಠ ಮೂರು ಸಲ ಸಭೆ ಸೇರತಕ್ಕದ್ದು.

(8) ಪ್ರಬಂಧಕ ಮಂಡಳಿಯು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಸಮಯ ಮತ್ತು ಸ್ಥಳದಲ್ಲಿ ಸಭೆ ಸೇರತಕ್ಕದ್ದು.

**25. ವ್ಯವಸ್ಥಾಪನಾ ಮಂಡಳಿ.-** (1) ವ್ಯವಸ್ಥಾಪನಾ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಗಳು;

(ii) ಸಹಕುಲಪತಿಗಳು;

(iii) ಕುಲಸಚಿವರು;

(iv) ಪ್ರಾಯೋಜಕ ಸಂಸ್ಥೆಯ ಇಬ್ಬರು ನಾಮನಿರ್ದೇಶಿತರು;

(v) ಕುಲಪತಿಗಳು ನಾಮನಿರ್ದೇಶಿಸಬಹುದಾದ ವಿದ್ಯಾಲಯಗಳ ಇಬ್ಬರು ಡೀನ್‌ಗಳು;

(2) ಕುಲಪತಿಯವರು ವ್ಯವಸ್ಥಾಪನಾ ಮಂಡಳಿಯ ಅಧ್ಯಕ್ಷರಾಗಿರತಕ್ಕದ್ದು ಮತ್ತು ಕುಲಸಚಿವರು ವ್ಯವಸ್ಥಾಪನಾ ಮಂಡಳಿಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ವ್ಯವಸ್ಥಾಪನಾ ಮಂಡಳಿಯು ವಿಶ್ವವಿದ್ಯಾಲಯದ ಕಾರ್ಯಕಾರಿ ಸಂಸ್ಥೆಯಾಗಿರತಕ್ಕದ್ದು. ವ್ಯವಸ್ಥಾಪನಾ ಮಂಡಳಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ವ್ಯವಸ್ಥಾಪನಾ ಮಂಡಳಿಯ ಎಲ್ಲಾ ಸಭೆಗಳಲ್ಲಿ ಯಾವಾಗಲೂ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು ಹಾಗೂ ಕುಲಪತಿಯವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೇ ಇದ್ದ ಸಂದರ್ಭದಲ್ಲಿ ಸಭೆಯಲ್ಲಿ ಹಾಜರಿರುವ ಸದಸ್ಯರು ಚುನಾಯಿಸಿದ ಯಾವುದೇ ಇತರ ಸದಸ್ಯರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ವ್ಯವಸ್ಥಾಪನಾ ಮಂಡಳಿಯ ಸಭೆಯಲ್ಲಿ ಯಾವುದೇ ವಿಷಯವನ್ನು ಕುರಿತು ವಿವಾದ ಉಂಟಾದಲ್ಲಿ ಸದರಿ ವಿಷಯವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ

ವಿಷಯದ ಬಗ್ಗೆ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**26. ಶೈಕ್ಷಣಿಕ ಪರಿಷತ್ತು.**- (1) ಶೈಕ್ಷಣಿಕ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು. ಎಂದರೆ:-

(i) ಕುಲಪತಿಯವರು - ಅಧ್ಯಕ್ಷರು

(ii) ಸಹಕುಲಪತಿಯವರು - ಸದಸ್ಯರು

(iii) ಕುಲಸಚಿವರು - ಕಾರ್ಯದರ್ಶಿಗಳು

(iv) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಶೈಕ್ಷಣಿಕ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಶೈಕ್ಷಣಿಕ ಸಂಸ್ಥೆಯಾಗಿರತಕ್ಕದ್ದು ಮತ್ತು ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಹಾಗೂ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**27. ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು.**- (1) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಸಂಶೋಧನಾ ಮತ್ತು ಅನ್ವೇಷಣಾ ಸಮಿತಿಯಾಗಿರತಕ್ಕದ್ದು ಹಾಗೂ ಸಂಶೋಧನಾ ಕ್ಷೇತ್ರಗಳ ಆದ್ಯತೆಯೂ ಒಳಗೊಂಡಂತೆ, ವಿಶ್ವವಿದ್ಯಾಲಯವು ಕೈಗೊಳ್ಳಬೇಕಾದ ಸಂಶೋಧನೆಯ ಬಗ್ಗೆ ಒಂದು ವ್ಯಾಪಕವಾದ ಪರಿಪೂರ್ಣ ಭವಿಷ್ಯದ್ ದೃಷ್ಟಿಯನ್ನು ಒದಗಿಸತಕ್ಕದ್ದು. ಈ ಪರಿಷತ್ತು, ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಮತ್ತು ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಸಂಶೋಧನೆ ಮತ್ತು ಅನ್ವೇಷಣಾ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಯವರು - ಅಧ್ಯಕ್ಷರು

(ii) ಸಹಕುಲಪತಿಯವರು - ಸದಸ್ಯರು

(iii) ಸಂಶೋಧನೆಯ ಡೀನ್ - ಕಾರ್ಯದರ್ಶಿ

(iv) ಅನ್ವೇಷಣಾ ವಿಭಾಗದ ಮುಖ್ಯಸ್ಥರು - ಸದಸ್ಯರು

(v) ಎಲ್ಲಾ ವ್ಯಾಸಂಗ ವಿಭಾಗಗಳ ಡೀನ್‌ಗಳು - ಸದಸ್ಯರು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

**28. ಹಣಕಾಸು ಸಮಿತಿ.**- (1) ಹಣಕಾಸು ಸಮಿತಿ ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು. ಎಂದರೆ:-

(i) ಕುಲಾಧಿಪತಿಯವರು ಅಥವಾ ಅವರ ನಾಮನಿರ್ದೇಶಿತರು - ಅಧ್ಯಕ್ಷರು

(ii) ಸಹ ಕುಲಾಧಿಪತಿಯವರು - ಸದಸ್ಯರು

(iii) ಕುಲಪತಿಯವರು - ಸದಸ್ಯರು

(iv) ಕುಲಸಚಿವರು - ಸದಸ್ಯರು

(v) ಹಣಕಾಸು ಅಧಿಕಾರಿ - ಕಾರ್ಯದರ್ಶಿ

(vi) ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು -ಸದಸ್ಯರು; ಮತ್ತು

(vii) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಹಣಕಾಸು ಸಮಿತಿಯು ಹಣಕಾಸಿನ ವಿಷಯಗಳನ್ನು ಕೈಗೊಳ್ಳುವ ವಿಶ್ವವಿದ್ಯಾಲಯದ ಪ್ರಧಾನ ಹಣಕಾಸು ಸಂಸ್ಥೆಯಾಗಿರತಕ್ಕದ್ದು ಹಾಗೂ ಅದು ಈ ಅಧಿನಿಯಮ, ನಿಯಮಗಳು ಮತ್ತು ಪರಿನಿಯಮಗಳ ಉಪಬಂಧಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಹಣಕಾಸು ವಿಷಯಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**29. ಇತರ ಪ್ರಾಧಿಕಾರಗಳು.-** ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ರಚನೆ, ಅಧಿಕಾರಗಳು ಹಾಗೂ ಪ್ರಕಾರ್ಯಗಳು ಪರಿನಿಯಮಗಳಿಂದ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

**30. ಒಂದು ಪ್ರಾಧಿಕಾರದ ಅಥವಾ ಸಂಸ್ಥೆಯ ಸದಸ್ಯತ್ವಕ್ಕೆ ಅನರ್ಹತೆ.-** ವಿಶ್ವವಿದ್ಯಾಲಯದ ಸಂಸ್ಥೆಗಳ ಯಾವುವೇ ಪ್ರಾಧಿಕಾರಗಳ ಒಬ್ಬ ವ್ಯಕ್ತಿಯು,-

(ಎ) ಅಸ್ವಸ್ಥ ಚಿತ್ತನಾಗಿದ್ದು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿಸಲ್ಪಟ್ಟಿದ್ದರೆ;

(ಬಿ) ಅವಿಮುಕ್ತ ದಿವಾಳಿಯಾಗಿದ್ದರೆ;

(ಸಿ) ನೈತಿಕ ಅಧಃಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದರೆ;

(ಡಿ) ಖಾಸಗಿ ಬೋಧನಾ ತರಗತಿಗಳನ್ನು ನಡೆಸುತ್ತಿದ್ದರೆ ಅಥವಾ ಸ್ವತಃ ನಿರತನಾಗಿದ್ದರೆ;

(ಇ) ಯಾವುದೇ ವಿಧದಲ್ಲಿ, ಎಲ್ಲಿಯೇ, ಯಾವುದೇ ಪರೀಕ್ಷೆಯನ್ನು ನಡೆಸುವಲ್ಲಿ ಅನುಚಿತ ಅಭ್ಯಾಸದಲ್ಲಿ ತೊಡಗಿದ್ದಕ್ಕಾಗಿ ಅಥವಾ ಉತ್ತೇಜಿಸಿದ್ದಕ್ಕಾಗಿ ದಂಡಿತನಾಗಿದ್ದರೆ;

(ಎಫ್) ಪ್ರಾಯೋಜಿತ ಸಂಸ್ಥೆಯು ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಯಾವೊಬ್ಬ ಸದಸ್ಯನನ್ನು ಆ ಪದವನ್ನು ಹೊಂದಿರುವುದಕ್ಕೆ ಅರ್ಹನಲ್ಲನೆಂದು ಲಿಖಿತದಲ್ಲಿ ಅಭಿಪ್ರಾಯ ನೀಡಿದಾಗಲೆಲ್ಲಾ,

-ಸದಸ್ಯನಾಗಿರುವುದಕ್ಕೆ ಅನರ್ಹನಾಗತಕ್ಕದ್ದು.

**31. ಖಾಲಿಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ.-** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಕಾರ್ಯ ಅಥವಾ ವ್ಯವಹರಣೆಗಳು ಕೇವಲ ಅದರಲ್ಲಿ ಯಾವುದೇ ಖಾಲಿಸ್ಥಾನ ಇದೆ ಎಂಬ ಕಾರಣದಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣದಿಂದ ಮಾತ್ರವೇ ಅಸಿಂಧುವಾಗತಕ್ಕದ್ದಲ್ಲ.

**32. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು.-** (1) ಯಾವುವೇ ಕಾರ್ಯಸೂಚಿ ವಿಷಯಗಳನ್ನು ಕುಲಾಧಿಪತಿಯವರ ಪೂರ್ವಾನುಮೋದನೆಯನ್ನು ಪಡೆಯದೇ ಪ್ರಬಂಧಕ ಮಂಡಳಿಯ ಅಥವಾ ಕಾರ್ಯಕಾರಿ ಪರಿಷತ್ತು ಅಥವಾ ಯಾವುದೇ ಸಮಿತಿಯ ಸಭೆಗಳ

ಕಾರ್ಯಸೂಚಿ ವಿಷಯಗಳಲ್ಲಿ ಸೇರಿಸತಕ್ಕದ್ದಲ್ಲ ಅಥವಾ ಚರ್ಚೆಗೆ ತೆಗೆದುಕೊಳ್ಳತಕ್ಕದ್ದಲ್ಲ ಮತ್ತು ತೀರ್ಮಾನಿಸತಕ್ಕದ್ದಲ್ಲ.

(2) ಈ ಅಧಿನಿಯಮದ ಯಾವುದೇ ಉಪಬಂಧಗಳನ್ನು ಪಾಲಿಸದೆ ಇರುವ ಸಂದರ್ಭದಲ್ಲಿ, ಕುಲಾಧಿಪತಿಯವರು ವಿಶ್ವವಿದ್ಯಾಲಯದ ಯಾವುದೇ ಪದಾಧಿಕಾರಿ ಅಥವಾ ಸಂಸ್ಥೆಯು ತೆಗೆದುಕೊಂಡ ಎಲ್ಲಾ ತೀರ್ಮಾನಗಳನ್ನು ವಿಪರ್ಯಯಗೊಳಿಸುವ ಮೂಲಕ ಪರಿಹಾರ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಅಧಿಕಾರವನ್ನು ಎಲ್ಲಾ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಅಂಥ ಪರಿಹಾರ ಕ್ರಮದ ಪರಿಣಾಮವಾಗಿ ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ವಿಶ್ವವಿದ್ಯಾಲಯದ ಪದಾಧಿಕಾರಿ ಅಥವಾ ಸಂಸ್ಥೆಯು ಕೈಗೊಂಡಿದ್ದ ಎಲ್ಲಾ ಅಂಥ ಕ್ರಮಗಳು ಮೊದಲಿನಿಂದಲೂ ಶೂನ್ಯ ಮತ್ತು ಅಕೃತ ಎಂದು ಭಾವಿಸತಕ್ಕದ್ದು ಹಾಗೂ ತತ್ಪರಿಣಾಮವಾಗಿ ಉಪಬಂಧ ಪಾಲಿಸದೇ ಇದ್ದ ವಿಷಯ ಅಥವಾ ನಿರ್ಧಾರದ ಸಂಬಂಧದಲ್ಲಿ ಅದಕ್ಕೆ ಮುಂಚೆ ಇದ್ದ ವಸ್ತುಸ್ಥಿತಿಯೇ ಮುಂದುವರಿಯತಕ್ಕದ್ದು.

## ಅಧ್ಯಾಯ –V
## ಪರಿನಿಯಮಗಳು ಮತ್ತು ವಿನಿಯಮಗಳು

**33. ಪರಿನಿಯಮಗಳು.-** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಪರಿನಿಯಮಗಳು ವಿಶ್ವವಿದ್ಯಾಲಯಕ್ಕೆ ಮತ್ತು ಸಿಬ್ಬಂದಿಗೆ ಸಂಬಂಧಿಸಿದ ಎಲ್ಲಾ ಅಥವಾ ಯಾವುದೇ ವಿಷಯಕ್ಕೆ ಈ ಕೆಳಗಿನಂತೆ ಉಪಬಂಧ ಕಲ್ಪಿಸಬಹುದು. ಎಂದರೆ:-

(i) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಕಾರ್ಯಕಲಾಪಗಳನ್ನು ನಡೆಸುವ ಮತ್ತು ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸದಿರುವ ಸಂಸ್ಥೆಗಳ ರಚನೆಯ ಕಾರ್ಯವಿಧಾನ;

(ii) 52ನೇ ಪ್ರಕರಣಕ್ಕೆ ಒಳಪಟ್ಟು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ವಿಶ್ವವಿದ್ಯಾಲಯ ದತ್ತಿ ನಿಧಿ, ಸಾಮಾನ್ಯ ನಿಧಿ ಹಾಗೂ ಅಭಿವೃದ್ಧಿ ನಿಧಿಗಳ ನಿರ್ವಹಣೆ;

(iii) ಕುಲಪತಿಗಳು, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರ ನೇಮಕಾತಿಯ ನಿಬಂಧನೆಗಳು ಹಾಗೂ ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಪ್ರಕಾರ್ಯಗಳು;

(iv) ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ, ಅಧ್ಯಾಪಕರ ಮತ್ತು ನೌಕರರ ನೇಮಕಾತಿ ವಿಧಾನ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(v) ವಿಶ್ವವಿದ್ಯಾಲಯ ಹಾಗೂ ಅದರ ಅಧಿಕಾರಿಗಳು, ವ್ಯಾಸಂಗ ವಿಭಾಗದ (ಫ್ಯಾಕಲ್ಟಿ) ಸದಸ್ಯರು, ನೌಕರರು ಹಾಗೂ ವಿದ್ಯಾರ್ಥಿಗಳ ನಡುವೆ ಉಂಟಾದ ವಿವಾದಗಳನ್ನು ಪರಿಹರಿಸುವ ಕಾರ್ಯವಿಧಾನ;

(vi) ವಿಭಾಗಗಳು ಮತ್ತು ವ್ಯಾಸಂಗ ವಿಭಾಗಗಳ (ಫ್ಯಾಕಲ್ಟಿಗಳ) ಸೃಜನೆ, ರದ್ದತಿ ಅಥವಾ ಪುನಾರಚನೆ;

(vii) ಇತರ ವಿಶ್ವವಿದ್ಯಾಲಯಗಳು ಅಥವಾ ಉನ್ನತ ಕಲಿಕಾ ಸಂಸ್ಥೆಗಳ ಜೊತೆಯಲ್ಲಿ ಸಹಕರಿಸಬೇಕಾದ ರೀತಿ;

(viii) ಗೌರವ ಪದವಿಗಳ ನೀಡಿಕೆಯ ಕಾರ್ಯವಿಧಾನ;

(ix) ಉಚಿತ ಶಿಕ್ಷಣ (ಫ್ರಿಶಿಪ್) ಮತ್ತು ವಿದ್ಯಾರ್ಥಿವೇತನ ಮಂಜೂರಾತಿಗೆ ಸಂಬಂಧಿಸಿದ ಉಪಬಂಧಗಳು;

(x) ವಿವಿಧ ವ್ಯಾಸಂಗ ಕ್ರಮಗಳಲ್ಲಿನ ಸೀಟುಗಳÀ ಸಂಖ್ಯೆಗೆ ಸಂಬಂಧಿಸಿದ ಕಾರ್ಯನೀತಿಗಳು ಮತ್ತು ಅಂಥ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಕಾರ್ಯವಿಧಾನ;

(xi) ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಶುಲ್ಕಕ್ಕೆ ಸಂಬಂಧಿಸಿದ ಕಾರ್ಯನೀತಿ;

(xii) ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಉಚಿತ ಶಿಕ್ಷಣ, ಪದಕಗಳು ಹಾಗೂ ಬಹುಮಾನಗಳನ್ನು ಪ್ರಾರಂಭಿಸುವುದು;

(xiii) ಹುದ್ದೆಗಳ ಸೃಜನೆ ಮತ್ತು ರದ್ದತಿಯ ಪ್ರಕ್ರಿಯೆ ; ಮತ್ತು

(xiv) ಪ್ರಬಂಧಕ ಮಂಡಳಿಯು ನಿರ್ಧರಿಸಬಹುದಾದ ಅಥವಾ ಈ ಅಧಿನಿಯಮದ ಅಡಿಯಲ್ಲಿ ಪರಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬೇಕಾದ ಅಗತ್ಯತೆಯುಳ್ಳ ಯಾವುದೇ ಇತರ ವಿಷಯಗಳು.

**34. ಪರಿನಿಯಮಗಳ ರಚನೆ ವಿಧಾನ.-** (1) ವ್ಯವಸ್ಥಾಪನಾ ಮಂಡಳಿಯು ರಚಿಸಿದ ಮೊದಲ ಪರಿನಿಯಮಗಳನ್ನು ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ವ್ಯವಸ್ಥಾಪನಾ ಮಂಡಳಿಯು ಸಲ್ಲಿಸಿದ ಮೊದಲ ಪರಿನಿಯಮಗಳನ್ನು ಪ್ರಬಂಧಕ ಮಂಡಳಿಯು ಪರಿಗಣಿಸತಕ್ಕದ್ದು ಹಾಗೂ ತಾನು ಅವಶ್ಯವೆಂದು ಭಾವಿಸಬಹುದಾದ ಅಂಥ ಮಾರ್ಪಾಡುಗಳು, ಯಾವುದಾದರು ಇದ್ದಲ್ಲಿ, ಅವುಗಳೊಡನೆ ತನ್ನ ಅನುಮೋದನೆಯನ್ನು ನೀಡತಕ್ಕದ್ದು.

(3) ವಿಶ್ವವಿದ್ಯಾಲಯವು ಪ್ರಬಂಧಕ ಮಂಡಳಿಯು ಅನುಮೋದಿಸಿದ ಮೊದಲ ಪರಿನಿಯಮಗಳನ್ನು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ಪ್ರಕಟಿಸತಕ್ಕದ್ದು ಮತ್ತು ತದನಂತರ ಮೊದಲ ಪರಿನಿಯಮಗಳ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**35. ಪರಿನಿಯಮಗಳ ತಿದ್ದುಪಡಿಯ ಅಧಿಕಾರ.-** ಪ್ರಬಂಧಕ ಮಂಡಳಿಯು ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸಬಹುದು ಅಥವಾ ಪರಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ಅವನ್ನು ನಿರಸನಗೊಳಿಸಬಹುದು.

**36. ವಿನಿಯಮಗಳು.-** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ವಿನಿಯಮಗಳು ಈ ಮುಂದಿನ ವಿಷಯಗಳಿಗೆ ಉಪಬಂಧಗಳನ್ನು ಕಲ್ಪಿಸಬಹುದು, ಎಂದರೆ:-

(i) ವಿಶ್ವವಿದ್ಯಾಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ವಿದ್ಯಾರ್ಥಿ ಪಟ್ಟಿಯಲ್ಲಿ ಅವರುಗಳ ದಾಖಲಾತಿ ಹಾಗೂ ಮುಂದುವರಿಕೆ;

(ii) ವಿಶ್ವವಿದ್ಯಾಲಯದ ಎಲ್ಲಾ ಪದವಿಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ನಿಗದಿಪಡಿಸತಕ್ಕ ವ್ಯಾಸಂಗ ಕ್ರಮಗಳು;

(iii) ಪದವಿಗಳ ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರದಾನ;

(iv) ಸಂಶೋಧನಾ ವೇತನಗಳು (ಫೆಲೋಶಿಪ್), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಪದಕಗಳು ಮತ್ತು ಬಹುಮಾನಗಳನ್ನು ನೀಡಲು ಷರತ್ತುಗಳು;

(v) ಪರೀಕ್ಷೆಗಳನ್ನು ನಡೆಸುವುದು ಹಾಗೂ ಪರೀಕ್ಷೆ ನಡೆಸುವ ಸಂಸ್ಥೆಗಳು, ಪರೀಕ್ಷಕರು, ಪರೀಕ್ಷಾ ಮೇಲ್ವಿಚಾರಕರು, ಟ್ಯಾಬುಲೇಟರ್‌ಗಳು ಮತ್ತು ಮಾಡರೇಟರ್‌ಗಳ ನೇಮಕಾತಿ ಷರತ್ತುಗಳು ಮತ್ತು ವಿಧಾನ ಹಾಗೂ ಅವರ ಕರ್ತವ್ಯಗಳು;

(vi) ವಿಶ್ವವಿದ್ಯಾಲಯದ ಪರೀಕ್ಷೆಗಳಿಗೆ, ಪದವಿಗಳಿಗೆ ಹಾಗೂ ಇತರ ಶೈಕ್ಷಣಿಕ ಪ್ರಶಸ್ತಿಗಳಿಗೆ ಪ್ರವೇಶಕ್ಕೆ ವಿಧಿಸತಕ್ಕ ಶುಲ್ಕ;

(vii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನಲ್ಲಿ ವಿದ್ಯಾರ್ಥಿಗಳ ನಿವಾಸಕ್ಕಾಗಿ ಷರತ್ತುಗಳು;

(viii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಶಿಸ್ತು ಪಾಲನೆ;

(ix) ಈ ಅಧಿನಿಯಮದ ಅಡಿಯಲ್ಲಿನ ಪರಿನಿಯಮಗಳಲ್ಲಿ ಉಪಬಂಧ ಕಲ್ಪಿಸಬಹುದಾಂಥ ಇತರ ಎಲ್ಲಾ ವಿಷಯಗಳು.

**37. ವಿನಿಯಮಗಳ ರಚನೆ ವಿಧಾನ.-** ವಿನಿಯಮಗಳನ್ನು ಶೈಕ್ಷಣಿಕ ಪರಿಷತ್ತು ರಚಿಸತಕ್ಕದ್ದು ಹಾಗೂ ವ್ಯವಸ್ಥಾಪನಾ ಮಂಡಳಿಯು ಅನುಮೋದಿಸತಕ್ಕದ್ದು.

**38. ವಿನಿಯಮಗಳ ತಿದ್ದುಪಡಿಗೆ ಅಧಿಕಾರ.-** ವ್ಯವಸ್ಥಾಪನಾ ಮಂಡಳಿಯ ಅನುಮೋದನೆಯೊಡನೆ ಶೈಕ್ಷಣಿಕ ಪರಿಷತ್ತು ಹೊಸ ವಿನಿಯಮಗಳನ್ನು ಅಥವಾ ಹೆಚ್ಚುವರಿ ವಿನಿಯಮಗಳನ್ನು ರಚಿಸಬಹುದು ಅಥವಾ ವಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ನಿರಸನಗೊಳಿಸಬಹುದು.

**39. ಶುಲ್ಕ ನಿಗಧಿ.-** (1) 9ನೇ ಪ್ರಕರಣದ ಪರಂತುಕದ ಅಡಿಯಲ್ಲಿ ರಾಜ್ಯ ಸರ್ಕಾರದ ಅಥವಾ ಕೇಂದ್ರ ಸರ್ಕಾರದ ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡಲಾದ ಪ್ರವೇಶಗಳಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳಲ್ಲಿನ ಶೇಕಡಾ ನಲವತ್ತರಷ್ಟು ಪ್ರವೇಶಗಳ ಸಂಬಂಧದಲ್ಲಿ ಶುಲ್ಕವು ಸರ್ಕಾರ ಮತ್ತು ವಿಶ್ವವಿದ್ಯಾಲಯವು ಸಮ್ಮತಾಭಿಪ್ರಾಯದ ಒಪ್ಪಂದದ ಪ್ರಕಾರ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) ಅಧಿನಿಯಮ, 2006ರ (2006ರ ಕರ್ನಾಟಕ ಅಧಿನಿಯಮ 8) ಅನುಸಾರವಾಗಿ ಸರ್ಕಾರಿ ಸೀಟುಗಳಿಗಾಗಿ ರಾಜ್ಯ ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸಿದಂತೆ ಇರತಕ್ಕದ್ದು.

(2) ವಿಶ್ವವಿದ್ಯಾಲಯದ ಇತರ ಸೀಟುಗಳಿಗೆ ಸಂಬಂಧಿಸಿದಂತೆ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳು (ಪ್ರವೇಶ, ನಿಯಂತ್ರಣ ಮತ್ತು ಶುಲ್ಕ ನಿಗದಿ) ಅಧಿನಿಯಮ, 2006ರ (2006ರ ಕರ್ನಾಟಕ ಅಧಿನಿಯಮ 8) 6ನೇ ಪ್ರಕರಣದ ಉಪಬಂಧಗಳ ಅನುಸಾರವಾಗಿ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರ ಅಧ್ಯಕ್ಷತೆಯ ಅಡಿಯಲ್ಲಿ ರಚಿಸಲಾದ ಶುಲ್ಕ ನಿಯಂತ್ರಣ ಸಮಿತಿಯ ಮೂಲಕ ಶುಲ್ಕವನ್ನು ನಿಗದಿಪಡಿಸತಕ್ಕದ್ದು. ಈ ಪ್ರಕರಣದ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವನ್ನು ಖಾಸಗಿ ಅನುದಾನರಹಿತ ವೃತ್ತಿಪರ ಶಿಕ್ಷಣ ಸಂಸ್ಥೆ ಎಂದು ಭಾವಿಸತಕ್ಕದ್ದು.

## ಅಧ್ಯಾಯ - VI
## ಸಂಕೀರ್ಣ

**40. ನೌಕರರ ಸೇವಾ ಷರತ್ತುಗಳು.-** (1) ಪರಿನಿಯಮಗಳ ಮತ್ತು ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಥವಾ ನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳು, ಯಾವುದಾದರೂ ಇದ್ದಲ್ಲಿ, ಅವುಗಳಿಗೆ ಒಳಪಟ್ಟು ಪ್ರತಿಯೊಬ್ಬ ನೌಕರನು ಲಿಖಿತ ಕರಾರಿನ ಅಡಿಯಲ್ಲಿ ನೇಮಕಗೊಳ್ಳತಕ್ಕದ್ದು ಮತ್ತು ಅದನ್ನು ವಿಶ್ವವಿದ್ಯಾಲಯದಲ್ಲಿ ಇಟ್ಟುಕೊಳ್ಳತಕ್ಕದ್ದು ಹಾಗೂ ಅದರ ಪ್ರತಿಯನ್ನು ಸಂಬಂಧಪಟ್ಟ ನೌಕರನಿಗೆ ನೀಡತಕ್ಕದ್ದು.

(2) ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಕಾರ್ಯವಿಧಾನಗಳ ಮೂಲಕ ನಿಯಂತ್ರಿಸತಕ್ಕದ್ದು.

(3) ಕರಾರಿನಿಂದಾಗಿ ವಿಶ್ವವಿದ್ಯಾಲಯ ಮತ್ತು ನೌಕರನ ಮಧ್ಯದಲ್ಲಿ ಉದ್ಭವಿಸಬಹುದಾದ ಯಾವುದೇ ವಿವಾದವನ್ನು, ಲಿಖಿತ ಕರಾರಿನಲ್ಲಿ ಉಪಬಂಧಿಸಿದ ವಿಧಾನದಲ್ಲಿ ಹಾಗೂ ಪರಿನಿಯಮಗಳ ಅನುಸಾರವಾಗಿ ಪರಿಹರಿಸತಕ್ಕದ್ದು.

**41. ಮೇಲ್ಮನವಿ ಹಕ್ಕು.-** ವಿಶ್ವವಿದ್ಯಾಲಯವು ತನ್ನ ನೌಕರರ ಅಥವಾ ವಿದ್ಯಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡ ಸಂದರ್ಭದಲ್ಲಿ, ಬಾಧಿತ ನೌಕರ ಅಥವಾ ವಿದ್ಯಾರ್ಥಿಗಳು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಮೇಲ್ಮನವಿ ಹಕ್ಕನ್ನು ಹೊಂದಿರತಕ್ಕದ್ದು.

**42. ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿ.-** ವಿಶ್ವವಿದ್ಯಾಲಯವು, ತನ್ನ ನೌಕರರ ಪ್ರಯೋಜನಕ್ಕಾಗಿ, ಪರಿನಿಯಮಗಳು ಮತ್ತು ಜಾರಿಯಲ್ಲಿರುವ ಕಾನೂನುಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿಯನ್ನು ರಚಿಸತಕ್ಕದ್ದು ಹಾಗೂ ಅಂಥ ವಿಮಾ ಯೋಜನೆಗಳನ್ನು ಒದಗಿಸತಕ್ಕದ್ದು.

**43. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು.-** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಇತರ ಸಂಸ್ಥೆಯ ಸದಸ್ಯನಾಗಿ ಯಾವೊಬ್ಬ ವ್ಯಕ್ತಿಯು ಸೂಕ್ತವಾಗಿ ಆಯ್ಕೆಯಾಗಿದ್ದಾನೆಯೇ ಅಥವಾ ನೇಮಕಗೊಂಡಿದ್ದಾನೆಯೇ ಅಥವಾ ಅದಕ್ಕೆ ಅರ್ಹನಾಗಿದ್ದಾನೆಯೇ ಎಂಬ ಯಾವುದೇ ಪ್ರಶ್ನೆ ಉದ್ಭವಿಸಿದರೆ, ಆ ವಿಷಯವನ್ನು ತೀರ್ಮಾನಕ್ಕಾಗಿ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**44. ಸಮಿತಿಗಳ ರಚನೆ.-** 23ನೇ ಪ್ರಕರಣದಲ್ಲಿ ನಮೂದಿಸಿದ ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಅಧಿಕಾರವನ್ನು ಹೊಂದಿರುವ ಅಂಥ ಸದಸ್ಯರನ್ನು ಒಳಗೊಂಡ ಅಂಥ ಪ್ರಾಧಿಕಾರದ ಒಂದು ಸಮಿತಿಯನ್ನು ರಚಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**45. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು.-** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಂಸ್ಥೆಯ ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ಪೈಕಿ ಯಾವುದೇ ಸ್ಥಾನವು ಆಕಸ್ಮಿಕವಾಗಿ ಖಾಲಿಯಾದರೆ, ಯಾರ ಸ್ಥಾನವು ಖಾಲಿಯಾಗಿ ತುಂಬಬೇಕಾಗಿ ಬಂದಿದೆಯೋ ಆ ಸದಸ್ಯನನ್ನು ಯಾವ ರೀತಿಯಲ್ಲಿ ಆರಿಸಲಾಗಿತ್ತೋ ಅದೇ ರೀತಿಯಲ್ಲಿ ಹೊಸ ಸದಸ್ಯನನ್ನು ಆರಿಸಿ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ಖಾಲಿ ಸ್ಥಾನವನ್ನು ಭರ್ತಿ ಮಾಡಿದ ವ್ಯಕ್ತಿಯು ಆತನು ಯಾವ ಸದಸ್ಯನ ಸ್ಥಾನದಲ್ಲಿ ಭರ್ತಿಯಾಗಿರುವನೋ ಆ ಸದಸ್ಯನು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯನಾಗಿ ಉಳಿಯುತ್ತಿದ್ದ ಬಾಕಿ ಅವಧಿಯವರೆಗೆ ಮಾತ್ರ ಸದಸ್ಯನಾಗಿರತಕ್ಕದ್ದು.

**46. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.-** ಈ ಅಧಿನಿಯಮ ಅಥವಾ ಪರಿನಿಯಮಗಳು ಅಥವಾ ನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ವಿಶ್ವವಿದ್ಯಾಲಯದ ಯಾವೊಬ್ಬ ಅಧಿಕಾರಿ ಅಥವಾ ಇತರ ನೌಕರರ ವಿರುದ್ಧ ಯಾವುದೇ ದಾವೆ ಅಥವಾ ಇತರ ಕಾನೂನು ವ್ಯವಹರಣೆಗಳನ್ನು ನಡೆಸಲು ಅವಕಾಶ ಇರತಕ್ಕದ್ದಲ್ಲ.

**47. ತಾತ್ಕಾಲಿಕ ಉಪಬಂಧಗಳು.-** ಈ ಅಧಿನಿಯಮ ಮತ್ತು ಪರಿನಿಯಮಗಳ ಯಾವುದೇ ಇತರ ಉಪಬಂಧಗಳಲ್ಲಿ ಏನೇ ಇದ್ದರೂ.-

(i) ಮೊದಲ ಕುಲಪತಿ ಮತ್ತು ಸಹಕುಲಪತಿ, ಯಾರಾದರೂ ಇದ್ದರೆ, ಅವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(ii) ಮೊದಲ ಕುಲಸಚಿವರನ್ನು ಮತ್ತು ಮೊದಲ ಹಣಕಾಸು ಅಧಿಕಾರಿಯವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು; ಮತ್ತು

(iii) ಮೊದಲ ವ್ಯವಸ್ಥಾಪನ ಮಂಡಳಿ, ಮೊದಲ ಹಣಕಾಸು ಸಮಿತಿ, ಮೊದಲ ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಹಾಗೂ ಮೊದಲ ಶೈಕ್ಷಣಿಕ ಪರಿಷತ್ತನ್ನು ಕುಲಾಧಿಪತಿಯವರು ರಚಿಸತಕ್ಕದ್ದು.

**48. ಶಾಶ್ವತ ಶಾಸನಬದ್ಧ ದತ್ತಿ ನಿಧಿ.-** (1) ವಿಶ್ವವಿದ್ಯಾಲಯವು, ಕನಿಷ್ಠ ಇಪ್ಪತ್ತೈದು ಕೋಟಿ ರೂಪಾಯಿಗಳನ್ನುಳ್ಳ ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರ ಪೈಕಿ ಕನಿಷ್ಠ ಹದಿನೈದು ಕೋಟಿ ರೂಪಾಯಿಗಳು ನಗದು ರೂಪದಲ್ಲಿ ಮತ್ತು ಇನ್ನುಳಿದದ್ದು ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ಇರತಕ್ಕದ್ದು ಮತ್ತು ಇದನ್ನು ತಾನಾಗಿಯೆ ಹೆಚ್ಚಿಸಬಹುದಾಗಿದ್ದು ಆದರೆ ಕಡಿಮೆ ಮಾಡತಕ್ಕದ್ದಲ್ಲ:

ಪರಂತು, ಬೆಂಗಳೂರು ಅಥವಾ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊರಗಿರುವ ವಿಶ್ವವಿದ್ಯಾಲಯದ ಸಂದರ್ಭದಲ್ಲಿ ಕನಿಷ್ಠ ಹತ್ತು ಕೋಟಿ ರೂಪಾಯಿಗಳು ನಗದು ರೂಪದಲ್ಲಿರತಕ್ಕದ್ದು ಮತ್ತು ಉಳಿದ ಐದು ಕೋಟಿ ರೂಪಾಯಿಗಳು ಬ್ಯಾಂಕ್ ಗ್ಯಾರಂಟಿಯ ರೂಪದಲ್ಲಿರತಕ್ಕದ್ದು.

(2) ವಿಶ್ವವಿದ್ಯಾಲಯವು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಹಣವನ್ನು ಹೂಡಲು ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯವು ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಗೆ ವರ್ಗಾವಣೆ ಮಾಡಬಹುದು. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನೂ ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(4) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಿದ ವರಮಾನದ ಶೇಕಡಾ ಎಪ್ಪತ್ತೈದರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತೈದರಷ್ಟನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**49. ವಿಶ್ವವಿದ್ಯಾಲಯದ ದತ್ತಿ ನಿಧಿ.-** (1) ವಿಶ್ವವಿದ್ಯಾಲಯವು, ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ನಿಧಿಗಳನ್ನು ಒಳಗೊಂಡ ವಿಶ್ವವಿದ್ಯಾಲಯದ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದು ಕಾಲಕಾಲಕ್ಕೆ ಸ್ವೀಕರಿಸಬಹುದಾದ ದೇಣಿಗೆಗಳು ಮತ್ತು ಇತರ ನಿಧಿಗಳನ್ನು ಒಳಗೊಂಡಿರತಕ್ಕದ್ದು.

(2) ವಿಶ್ವವಿದ್ಯಾಲಯವು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ವಿಶ್ವವಿದ್ಯಾಲಯದ ದತ್ತಿನಿಧಿಯನ್ನು ಹೂಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯ ದತ್ತಿ ನಿಧಿಯು, ವಿಶ್ವವಿದ್ಯಾಲಯವು ತನ್ನ ಸಾಮಾಜಿಕ ಧ್ಯೇಯೋದ್ದೇಶಗಳನ್ನು ನೆರವೇರಿಸುವ ಸಂದರ್ಭದಲ್ಲಿ ಮತ್ತು/ಅಥವಾ ಮುಂಗಾಣದ ಸನ್ನಿವೇಶದಲ್ಲಿ ಉದ್ಭವಿಸಬಹುದಾದ ಹಣಕಾಸು ಸವಾಲುಗಳಿಂದ ತನ್ನನ್ನು ರಕ್ಷಿಸಿಕೊಳ್ಳುವುದಕ್ಕಾಗಿ, ಸ್ವಇಚ್ಛೆಯಿಂದ ನಿರ್ವಹಿಸಿಕೊಂಡು ಬರಲು ಮತ್ತು ಜವಾಬ್ದಾರಿಯಿಂದ ಹಣ ಹೂಡಿಕೆ ಮಾಡಲು ಇಚ್ಛೆಯುಳ್ಳವರಾಗಿ ಸ್ವಯಂ ವಿಧಿಸಿಕೊಂಡ ನಿಧಿಯಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಗೆ ವರ್ಗಾಯಿಸಬಹುದು. ವಿಶ್ವವಿದ್ಯಾಲಯದ ಸಮಾಪಣೆಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ವಿಶ್ವವಿದ್ಯಾಲಯದ ದತ್ತಿ ನಿಧಿ ಂದ ಯಾವುದೇ ಮೊಬಲಗನ್ನು ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(5) ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಬರುವ ವರಮಾನದ ಶೇಕಡಾ ಎಂಭತ್ತರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸದ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತರಷ್ಟನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**50. ಸಾಮಾನ್ಯ ನಿಧಿ.-** (1) ವಿಶ್ವವಿದ್ಯಾಲಯವು, ಒಂದು ಸಾಮಾನ್ಯ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯವು ವಿಧಿಸಬಹುದಾದ ಎಲ್ಲಾ ಶುಲ್ಕಗಳು;

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವುದೇ ಇತರ ಮೂಲದಿಂದ ಸ್ವೀಕರಿಸಲಾದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ದೇಣಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು ಅಥವಾ ವಂತಿಗೆಗಳು;

(2) ಸಾಮಾನ್ಯ ನಿಧಿಗೆ ಜಮಾ ಮಾಡುವ ನಿಧಿಗಳನ್ನು ವಿಶ್ವವಿದ್ಯಾಲಯದ ಎಲ್ಲಾ ಆವರ್ತಕ ವೆಚ್ಚಗಳನ್ನು ಭರಿಸಲು ಉಪಯೋಗಿಸಕೊಳ್ಳತಕ್ಕದ್ದು.

**51. ಅಭಿವೃದ್ಧಿ ನಿಧಿ.-** (1) ವಿಶ್ವವಿದ್ಯಾಲಯವು, ಒಂದು ಅಭಿವೃದ್ಧಿ ನಿಧಿಯನ್ನು ಸಹ ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:-

(i) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ವಿದ್ಯಾರ್ಥಿಗಳಿಂದ ವಿಧಿಸಬಹುದಾದ ಅಭಿವೃದ್ಧಿ ಶುಲ್ಕಗಳು;

(ii) ವಿಶ್ವವಿದ್ಯಾಲಯದ ಅಭಿವೃದ್ಧಿಯ ಉದ್ದೇಶಗಳಿಗಾಗಿ ಯಾವುದೇ ಇತರ ಮೂಲಗಳಿಂದ ಸ್ವೀಕರಿಸಿದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ವಂತಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು ಅಥವಾ ವಂತಿಗೆಗಳು; ಮತ್ತು

(v) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಲಾದ ಎಲ್ಲಾ ವರಮಾನಗಳು.

(2) ಅಭಿವೃದ್ಧಿ ನಿಧಿಗೆ ಕಾಲಕಾಲಕ್ಕೆ ಜಮಾ ಮಾಡಿದ ನಿಧಿಯನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಉಪಯೋಗಿಸಕೊಳ್ಳತಕ್ಕದ್ದು.

**52. ನಿಧಿಗಳ ನಿರ್ವಹಣೆ.-** 48, 49, 50 ಮತ್ತು 51ನೇ ಪ್ರಕರಣಗಳಡಿಯಲ್ಲಿ ಸ್ಥಾಪಿಸಲಾದ ನಿಧಿಗಳನ್ನು ಪ್ರಬಂಧಕ ಮಂಡಳಿಯ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ನಿಯಂತ್ರಿಸತಕ್ಕದ್ದು ಹಾಗೂ ನಿರ್ವಹಿಸತಕ್ಕದ್ದು.

**53. ವಾರ್ಷಿಕ ವರದಿ.-** (1) ವಿಶ್ವವಿದ್ಯಾಲಯದ ವಾರ್ಷಿಕ ವರದಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ಅದರ ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಪ್ರಬಂಧಕ ಮಂಡಳಿಯು ವಾರ್ಷಿಕ ವರದಿಯನ್ನು ತನ್ನ ಸಭೆಯಲ್ಲಿ ಪರಿಗಣಿಸತಕ್ಕದ್ದು ಹಾಗೂ ಅದನ್ನು ಮಾರ್ಪಾಡುಗಳೊಡನೆ ಅಥವಾ ಮಾರ್ಪಾಡುಗಳಿಲ್ಲದೆ ಅನುಮೋದಿಸಬಹುದು.

(3) ಪ್ರಬಂಧಕ ಮಂಡಳಿಯು ಸೂಕ್ತವಾಗಿ ಅನುಮೋದಿಸಿದ ವಾರ್ಷಿಕ ವರದಿಯ ಒಂದು ಪ್ರತಿಯನ್ನು ಪ್ರತಿವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ಡಿಸೆಂಬರ್ 31ಕ್ಕೆ ಮೊದಲು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**54. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.-** (1) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕ ಪತ್ರ ಮತ್ತು ಜಮಾ ಖರ್ಚು ಪಟ್ಟಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯಕ್ಕೆ ಎಲ್ಲಾ ಮೂಲಗಳಿಂದ ಪ್ರಾಪ್ತವಾಗುವ ಅಥವಾ ಸ್ವೀಕರಿಸಲಾಗುವ ಎಲ್ಲಾ ನಿಧಿಗಳು ಹಾಗೂ ವಿತರಿಸಿದ ಅಥವಾ ಸಂದಾಯ ಮಾಡಿದ ಎಲ್ಲಾ ಮೊಬಲಗುಗಳನ್ನು ವಿಶ್ವವಿದ್ಯಾಲಯವು ನಿರ್ವಹಿಸುವ ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕಪತ್ರಗಳನ್ನು ಪ್ರತಿ ವರ್ಷವೂ ಭಾರತದ ಚಾರ್ಟೆಡ್ ಅಕೌಂಟೆಂಟ್‌ಗಳ ಸಂಸ್ಥೆಯ ಸದಸ್ಯರಾಗಿರುವ ಒಬ್ಬ ಲೆಕ್ಕಪರಿಶೋಧಕರಿಂದ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಲೆಕ್ಕಪರಿಶೋಧನಾ ವರದಿಯೊಡನೆ, ಪ್ರತಿ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ನವೆಂಬರ್ 30ಕ್ಕೆ ಮೊದಲು ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(4) ವಾರ್ಷಿಕ ಲೆಕ್ಕಪತ್ರಗಳು, ಜಮಾಖರ್ಚು ಪಟ್ಟಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಪ್ರಬಂಧಕ ಮಂಡಳಿಯು ತನ್ನ ಸಭೆಯಲ್ಲಿ ಪರ್ಯಾಲೋಚಿಸತಕ್ಕದ್ದು ಮತ್ತು ಪ್ರಬಂಧಕ ಮಂಡಳಿಯು ಅದನ್ನು ತನ್ನ ಅಭಿಪ್ರಾಯಗಳೊಡನೆ ಸಂದರ್ಶಕರಿಗೆ ಹಾಗೂ ಸರ್ಕಾರಕ್ಕೆ ಪ್ರತಿ ವರ್ಷದ ಡಿಸೆಂಬರ್ 31ಕ್ಕೆ ಮೊದಲು ಕಳುಹಿಸತಕ್ಕದ್ದು.

(5) ಲೆಕ್ಕಪರಿಶೋಧಕರ ವರದಿಯಲ್ಲಿ ಯಾವುದೇ ಮುಖ್ಯ ಬದಲಾವಣೆ ಇದ್ದ ಸಂದರ್ಭದಲ್ಲಿ, ಅವುಗಳನ್ನು ಸರಿಪಡಿಸಲು, ರಾಜ್ಯ ಸರ್ಕಾರವು ವಿಶ್ವವಿದ್ಯಾಲಯಕ್ಕೆ ನಿರ್ದೇಶನಗಳನ್ನು ಹೊರಡಿಬಹುದು ಮತ್ತು ಅಂಥ ನಿರ್ದೇಶನಗಳು ವಿಶ್ವವಿದ್ಯಾಲಯದ ಮೇಲೆ ಬಂಧನಕಾರಿಯಾಗಿರತಕ್ಕದ್ದು.

**55. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ.-** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಮಿತಿಯ ಯಾವುದೇ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ ಅಥವಾ ಗೊತ್ತುವಳಿಯು ಅಥವಾ ವಿಶ್ವವಿದ್ಯಾಲಯದ ಸ್ವಾಧೀನದಲ್ಲಿರುವ ಇತರ ದಾಖಲೆಗಳು ಅಥವಾ ವಿಶ್ವವಿದ್ಯಾಲಯವು ಯುಕ್ತವಾಗಿ ನಿರ್ವಹಿಸುವ ಯಾವುದೇ ರಿಜಿಸ್ಟರ್‌ನಲ್ಲಿಯ ಯಾವುದೇ ನಮೂದುಗಳ ಪ್ರತಿಯನ್ನು, ಅದರ ಮೇಲೆ ಕುಲಸಚಿವರು ಪ್ರಮಾಣೀಕರಿಸಿದ್ದರೆ, ಅದನ್ನು ಅಂಥ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ, ಗೊತ್ತುವಳಿ ಅಥವಾ ದಾಖಲೆ ಅಥವಾ ರಿಜಿಸ್ಟರ್‌ನಲ್ಲಿ ಇರುವ ನಮೂದನ್ನು ಮೇಲ್ನೋಟದ ಸಾಕ್ಷ್ಯವೆಂಬುದಾಗಿ ಸ್ವೀಕರಿಸತಕ್ಕದ್ದು ಮತ್ತು ವಿಷಯಗಳ ಸಾಕ್ಷಿಯಾಗಿ ಅಂಗೀಕರಿಸತಕ್ಕದ್ದು ಹಾಗೂ ಮೂಲ ದಾಖಲೆಗಳನ್ನೇ ಸಲ್ಲಿಸಿದ್ದರೆ ಅದನ್ನು, ದಾಖಲಿಸಿರುವ ವಿಷಯಗಳು ಮತ್ತು ವಹಿವಾಟುಗಳ

ಸಾಕ್ಷ್ಯವಾಗಿ ಅಂಗೀಕರಿಸಲಾಗುತ್ತಿತ್ತೋ, ಅದೇ ರೀತಿಯಲ್ಲಿ ಇವನ್ನೂ ಸಾಕ್ಷ್ಯವಾಗಿ ಅಂಗೀಕರಿಸತಕ್ಕದ್ದು.

**56. ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ.-** ರಾಜ್ಯಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಥವಾ ಅದರಲ್ಲಿ ಇರುವ ಯಾವುವೇ ಉಪಬಂಧಗಳನ್ನು ಅಥವಾ ಅದರಡಿಯಲ್ಲಿ ರಚಿಸಿದ ಯಾವುವೇ ನಿಯಮಗಳು ಅಥವಾ ಆದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿರ್ದೇಶನ ನೀಡುವುದು ಅವಶ್ಯವೆಂದು ಅಥವಾ ಉಚಿತವೆಂದು ಅಭಿಪ್ರಾಯಪಟ್ಟಲ್ಲಿ ಅದು ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ ಅಥವಾ ಸಂದರ್ಭಾನುಸಾರವಾಗಿ ವ್ಯವಸ್ಥಾಪನಾ ಮಂಡಳಿಯು ಅಂಥ ಪ್ರತಿಯೊಂದು ನಿರ್ದೇಶನವನ್ನು ಪಾಲಿಸತಕ್ಕದ್ದು.

**57. ದಂಡಗಳು.-** (1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿತವಾದ ನಿಯಮಗಳು ಉಪಬಂಧಗಳನ್ನು ಅಥವಾ ಯಾವುದೇ ಪರೀಕ್ಷಾ ವಿಷಯಗಳನ್ನು ಅಥವಾ ಪದವಿಗಳನ್ನು ನೀಡುವುದಕ್ಕೆ ಅಥವಾ ಅಂಕಪಟ್ಟಿಗಳನ್ನು ನೀಡುವುದಕ್ಕೆ ಸಂಬಂಧಪಟ್ಟ ವಿಷಯಗಳಲ್ಲಿ ಉಲ್ಲಂಘನೆಗಳನ್ನು ಮಾಡುವ ಯಾವೊಬ್ಬ ವ್ಯಕ್ತಿಯು, ಅಪರಾಧ ನಿರ್ಣಯವಾದ ಮೇಲೆ, ಐವತ್ತು ಸಾವಿರ ರೂಪಾಯಿಗಳಿಗೆ ಕಡಿಮೆಯಲ್ಲದ ಆದರೆ ಹತ್ತು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಆರು ತಿಂಗಳ ಅವಧಿಗಿಂತ ಕಡಿಮೆಯಲ್ಲದ ಆದರೆ ಎರಡು ವರ್ಷಗಳ ಅವಧಿಯವರೆಗೆ ವಿಸ್ತರಿಸಬಹುದಾದ ಕಾರಾವಾಸದಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು:

ಪರಂತು, ಅಪರಾಧವನ್ನು ಎಸಗುವಲ್ಲಿ ವಿಶ್ವವಿದ್ಯಾಲಯವೂ ಸಹ ಒಳಗೊಂಡಿರುವಲ್ಲಿ, ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಈ ಅಧಿನಿಯಮದ ಅಡಿಯಲ್ಲಿ ಮಂಜೂರು ಮಾಡಲಾದ ಅನುಮತಿ ಪತ್ರವನ್ನು ಹಿಂತೆಗೆದುಕೊಳ್ಳತಕ್ಕದ್ದು.

(2) ಈ ಪ್ರಕರಣದ ಅಡಿಯಲ್ಲಿಯ ದಂಡವನ್ನು ಇತರ ಯಾವುದೇ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಲಾದ ದಂಡಕ್ಕೆ ಬಾಧಕವಾಗದಂತೆ ವಿಧಿಸಬಹುದು.

**58. ಪ್ರವೇಶಿಸುವ ಮತ್ತು ಪರಿಶೋಧಿಸುವ ಅಧಿಕಾರ.-** ಈ ಉದ್ದೇಶಕ್ಕಾ , ರಾಜ್ಯಸರ್ಕಾರದಿಂದ ಪ್ರಾಧಿಕೃತಗೊಂಡ 'ಎ' ಸಮೂಹದ ಅಧಿಕಾರಿ ದರ್ಜೆಗಿಂತ ಕಡಿಮೆಇಲ್ಲದ ದರ್ಜೆಯ ಯಾವೊಬ್ಬ ಅಧಿಕಾರಿಯು, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಶನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ 37) ಅಡಿಯಲ್ಲಿ ನಿರ್ದಿಷ್ಟಪಡಿಸಿರಬಹುದಾದ ಅಂಥ ಷರತ್ತುಗಳಿಗೆ ಒಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ, ಆ ಅಧಿನಿಯಮದ 9ನೇ ಪ್ರಕರಣದ ಅಡಿಯಲ್ಲಿ ಉಪಬಂಧಿಸಲಾದಂತಹವೇ ಅಧಿಕಾರಗಳನ್ನು ಚಲಾಯಿಸಲು ಮತ್ತು ಪ್ರಕಾರ್ಯಗಳನ್ನು ನೆರವೇರಿಸಲು ಅಧಿಕೃತನಾದ ಅಧಿಕಾರಿ ಎಂಬುದಾಗಿ ಭಾವಿಸತಕ್ಕದ್ದು.

**59. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ನಿರ್ದೇಶನವನ್ನು ನೀಡುವ ಅಧಿಕಾರ.-** (1) ವಿಶ್ವವಿದ್ಯಾಲಯವು ತನ್ನ ರಚನೆ ಅಥವಾ ನಿಗಮನವನ್ನು ನಿಯಂತ್ರಿಸುವ ಕಾನೂನಿಗೆ ಅನುಸಾರವಾಗಿ ತನ್ನ ಸಮಾಪನವನ್ನು ಉದ್ದೇಶಿಸಿದ್ದಲ್ಲಿ, ಅದು ಕನಿಷ್ಠ ಆರು ತಿಂಗಳ ಲಿಖಿತ ಪೂರ್ವ ಸೂಚನೆಯನ್ನು (ನೋಟಿಸು) ಸರ್ಕಾರಕ್ಕೆ ನೀಡತಕ್ಕದ್ದು.

(2) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಈ ಕೆಳಗಿನವುಗಳ ಬಗ್ಗೆ, ಎಂದರೆ:-

(i) ಪದವಿಯನ್ನು ನೀಡುವುದಕ್ಕಾಗಿ ಬೋಧನೆಯ ಗುಣಮಟ್ಟ;

(ii) ಶಿಕ್ಷಣದ ಗುಣಮಟ್ಟ;

(iii) ಉನ್ನತ ಶಿಕ್ಷಣದ ವ್ಯಾಪಾರೀಕರಣವನ್ನು ತಡೆಗಟ್ಟುವುದು;

(iv) ಅಧಿನಿಯಮದ ಉಪಬಂಧಗಳ ಉಲ್ಲಂಘನೆಯ ಬಗ್ಗೆ, ಯಾವುದಾದರೂ ಇದ್ದಲ್ಲಿ,

- ಇವುಗಳ ಬಗ್ಗೆ ನಿಯತಕಾಲಿಕ ಪರಿವೀಕ್ಷಣೆಯನ್ನು ನಡೆಸತಕ್ಕದ್ದು ಮತ್ತು ಸರ್ಕಾರಕ್ಕೆ ವರದಿಯನ್ನು ಕಳುಹಿಸತಕ್ಕದ್ದು.

(3) ದುರ್ವ್ಯವಹರಣೆ, ದುರಾಡಳಿತ ಮತ್ತು ಅಶಿಸ್ತು ಆಗಿದೆ ಎಂಬುದನ್ನು ಗುರುತಿಸಿದರೆ, ಸರ್ಕಾರವು, ವಿಶ್ವವಿದ್ಯಾಲಯದ ಆಡಳಿತವರ್ಗದವರಿಗೆ ಆಡಳಿತವನ್ನು ಸರಿಪಡಿಸಬೇಕೆಂದು ನಿರ್ದೇಶನಗಳನ್ನು ನೀಡತಕ್ಕದ್ದು. ನಿಯಮಿಸಬಹುದಾದ ಅಂಥ ಅವಧಿಯೊಳಗೆ ಆ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುವ ಹಕ್ಕು ಸರ್ಕಾರದಲ್ಲಿ ನಿಹಿತವಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ವಿಧಾನವು, ಸರ್ಕಾರವು ಈ ಸಂಬಂಧದಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು:

ಪರಂತು, ವಿಶ್ವವಿದ್ಯಾಲಯವು ತನ್ನ ಕಾರಣಗಳನ್ನು ಹೇಳಿಕೊಳ್ಳಲು ಸಮಂಜಸ ಅವಕಾಶಗಳನ್ನು ನೀಡಿದ ಹೊರತು ಅಂಥ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

(5) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೋಟಿಸನ್ನು ಸ್ವೀಕರಿಸಿದ ಮೇಲೆ, ಸರ್ಕಾರವು ಸಂಬಂಧಿಸಿದ ನಿಯಂತ್ರಣಾ ಪ್ರಾಧಿಕಾರದೊಡನೆ ಸಮಾಲೋಚಿಸಿ, ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ಅಥವಾ ವ್ಯಾಸಂಗ ಕ್ರಮವನ್ನು ಪರಿಸಮಾಪನಗೊಳಿಸಲು ಉದ್ದೇಶಿಸಿದ ದಿನಾಂಕದಿಂದ, ವಿಶ್ವವಿದ್ಯಾಲಯದಲ್ಲಿ ನಿಯತ ವ್ಯಾಸಂಗ ಕ್ರಮಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕೊನೆಯ ತಂಡ (ಬ್ಯಾಚ್) ತನ್ನ ವ್ಯಾಸಂಗ ಕ್ರಮವನ್ನು ಮುಗಿಸುವವರೆಗೆ ಪರಿನಿಯಮಗಳಲ್ಲಿ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು.

**60. ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು.-** (1) 59ನೇ ಪ್ರಕರಣದ (5)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ಅದರ ಆಡಳಿತಾತ್ಮಕ ವೆಚ್ಚಗಳನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಭರಿಸತಕ್ಕದ್ದು.

(2) ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ವಿಶ್ವವಿದ್ಯಾಲಯದ ವೆಚ್ಚವನ್ನು ಭರಿಸಲು 48, 49, 50 ಮತ್ತು 51ನೇ ಪ್ರಕರಣಗಳ ಅಡಿಯಲ್ಲಿ ಉಲ್ಲೇಖಿಸಲಾದ ನಿಧಿಯು ಸಾಕಷ್ಟು ಇಲ್ಲದಿದ್ದಲ್ಲಿ, ಅಂಥ ವೆಚ್ಚವನ್ನು ಸರ್ಕಾರವು, ವಿಶ್ವವಿದ್ಯಾಲಯದ ಸ್ವತ್ತುಗಳು ಮತ್ತು ಆಸ್ತಿಗಳನ್ನು ವಿಲೇ ಮಾಡುವ ಮೂಲಕ ಭರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಸಮಾಪನೆಯು ದುರ್ವ್ಯವಹರಣೆ ಅಥವಾ ದುರಾಡಳಿತದ ಕಾರಣಗಳಿಗಾಗಿ ಆಗಿದ್ದರೆ, ಸರ್ಕಾರವು ಅಂಥ ದುರ್ವ್ಯವಹಾರಕ್ಕೆ ಅಥವಾ ದುರಾಡಳಿತಕ್ಕೆ

ಹೊಣೆಯಾಗಿರುವ ವ್ಯಕ್ತಿಗಳನ್ನು ಗುರುತಿಸುವ ಮತ್ತು ಅವರ ಮೇಲೆ ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ದಂಡನೆಯನ್ನು ವಿಧಿಸಲು ಸ್ವತಂತ್ರವಾಗಿರತಕ್ಕದ್ದು.

**61. ತೊಂದರೆಗಳ ನಿವಾರಣೆಗೆ ಅಧಿಕಾರ.-** (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಅಥವಾ ಆದೇಶದ ಮೂಲಕ ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಐದು ವರ್ಷಗಳು ಮುಕ್ತಾಯವಾದ ತರುವಾಯ ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಅಧಿಸೂಚನೆ ಅಥವಾ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

**62. ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ.-** (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಉಭಯ ಸದನಗಳು ಒಪ್ಪಿದರೆ ತದನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ದತಿಯು ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವನ್ನು ಉಂಟುಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಕೆ.ದ್ವಾರಕನಾಥ್ ಬಾಬು)**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ

# ಕರ್ನಾಟಕ ರಾಜ್ಯಪತ್ರ

**ಅಧಿಕೃತವಾಗಿ ಪ್ರಕಟಿಸಲಾದುದು**

**ವಿಶೇಷ ರಾಜ್ಯ ಪತ್ರಿಕೆ**

| ಭಾಗ – ೪ಎ<br>Part – IV A | ಬೆಂಗಳೂರು, ಶುಕ್ರವಾರ, ೧೬, ಏಪ್ರಿಲ್, ೨೦೨೧ (ಚೈತ್ರ, ೨೬, ಶಕವರ್ಷ, ೧೯೪೩)<br>BENGALURU, FRIDAY, 16, APRIL, 2021 (CHAITHRA, 26, SHAKAVARSHA, 1943 | ನಂ. ೪೩೭<br>No. 437 |
|---|---|---|

## ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ ಸಚಿವಾಲಯ

## ಅಧಿಸೂಚನೆ

**ಸಂಖ್ಯೆ: ಸಂವ್ಯಶಾಇ 73 ಶಾಸನ 2020, ದಿನಾಂಕ: 16.04.2021**

ಏಟ್ರಿಯಾ ವಿಶ್ವವಿದ್ಯಾಲಯ ವಿಧೇಯಕ, 2020 ಇದಕ್ಕೆ 2021ರ ಏಪ್ರಿಲ್ ತಿಂಗಳ 15ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2021 ರ ಕರ್ನಾಟಕ ಅಧಿನಿಯಮ ಸಂಖ್ಯೆ: 22 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ (ಭಾಗ IV) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ,-

**2021ರ ಕರ್ನಾಟಕ ಅಧಿನಿಯಮ ಸಂಖ್ಯೆ: 22**

(2021 ರ ಏಪ್ರಿಲ್ ತಿಂಗಳ 16ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಏಟ್ರಿಯಾ ವಿಶ್ವವಿದ್ಯಾಲಯ ಅಧಿನಿಯಮ, 2020**

(2021ರ ಏಪ್ರಿಲ್ ತಿಂಗಳ 15ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮೋದನೆಯನ್ನು ಪಡೆಯಲಾಗಿದೆ)

ವಿಜ್ಞಾನಗಳು, ಇಂಜಿನಿಯರಿಂಗ್‌ನ ಎಲ್ಲಾ ಶಾಖೆಗಳು, ಕಲೆ, ವ್ಯವಸ್ಥಾಪನೆ, ವಾಣಿಜ್ಯ ಮತ್ತು ಇವುಗಳಲ್ಲಿ ಅನ್ವಯಿಕ ವಿಶ್ವವಿದ್ಯಾಲಯ ಶಿಕ್ಷಣದ ಪ್ರಗತಿಯನ್ನು ಪ್ರೋತ್ಸಾಹಿಸಲು ಮತ್ತು ಕೈಗೊಳ್ಳಲು ಹಾಗೂ ಅದಕ್ಕೆ ಸಂಬಂಧಿಸಿದ ಅಥವಾ ಅದಕ್ಕೆ ಆನುಷಂಗಿಕವಾದ ವಿಷಯಗಳಿಗಾಗಿ ಎ.ಎಸ್.ಕುಪ್ಪರಾಜು ಅಂಡ್ ಬ್ರದರ್ಸ್ ಚಾರಿಟಬಲ್ ಫೌಂಡೇಷನ್ ಟ್ರಸ್ಟ್‌ನ ಮೂಲಕ ಖಾಸಗಿ ವಲಯದಲ್ಲಿ ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸಲು ಒಂದು ಅಧಿನಿಯಮ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ವಿಜ್ಞಾನಗಳು, ಇಂಜಿನಿಯರಿಂಗ್‌ನ ಎಲ್ಲಾ ಶಾಖೆಗಳು, ಕಲೆ, ವ್ಯವಸ್ಥಾಪನೆ, ವಾಣಿಜ್ಯ ಇವುಗಳಲ್ಲಿ ಅನ್ವಯಿಕ ವಿಶ್ವವಿದ್ಯಾಲಯ ಶಿಕ್ಷಣದ ಪ್ರಗತಿಯನ್ನು ಪ್ರೋತ್ಸಾಹಿಸಲು ಮತ್ತು ಕೈಗೊಳ್ಳಲು ಹಾಗೂ ಅದಕ್ಕೆ ಸಂಬಂಧಿಸಿದ ಅಥವಾ ಅದಕ್ಕೆ ಆನುಷಾಂಗಿಕವಾದ ವಿಷಯಗಳಿಗಾಗಿ ಎ.ಎಸ್.ಕುಪ್ಪರಾಜು ಅಂಡ್ ಬ್ರದರ್ಸ್ ಚಾರಿಟಬಲ್ ಫೌಂಡೇಷನ್ ಟ್ರಸ್ಟ್‌ನ ಮೂಲಕ ಖಾಸಗಿ ವಲಯದಲ್ಲಿ ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತೊಂದನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

## ಅಧ್ಯಾಯ - I
## ಪ್ರಾರಂಭಿಕ

**1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಏಟ್ರಿಯಾ ವಿಶ್ವವಿದ್ಯಾಲಯ ಅಧಿನಿಯಮ, 2020 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. ಪರಿಭಾಷೆಗಳು.-** ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) ``ಶೈಕ್ಷಣಿಕ ಪರಿಷತ್ತು (ಅಕೆಡೆಮಿಕ್ ಕೌನ್ಸಿಲ್)'' ಎಂದರೆ, 26ನೇ ಪ್ರಕರಣದಲ್ಲಿ ಸ್ಥಾಪಿಸಲಾದ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು;

(ಬಿ) ``ಕಾರ್ಯಸೂಚಿ ವಿಷಯಗಳು'', ಎಂದರೆ, ಪರಿನಿಯಮಗಳಲ್ಲಿ ಹೆಸರಿಸಬಹುದಾದ ಮತ್ತು ಒಂದು ಸಭೆಯಲ್ಲಿ ಆ ವಿಷಯಗಳನ್ನು ಮತ್ತು ಕಲಾಪಗಳನ್ನು ಅನುಮೋದಿಸಬಹುದೆಂದು ತಮ್ಮ ಸಮ್ಮತಿ ಸೂಚಿಸಿ ಕುಲಾಧಿಪತಿಯವರು ಮುಂಚಿತವಾಗಿಯೇ ಲಿಖಿತ ಅನುಮೋದನೆಯನ್ನು ಕೊಟ್ಟಿದ್ದಾಗ ಮಾತ್ರವೇ, ಪ್ರಬಂಧಕರ ಮಂಡಳಿ ಅಥವಾ ವ್ಯವಸ್ಥಾಪನಾ ಮಂಡಳಿ ಅಥವಾ ಶೈಕ್ಷಣಿಕ ಪರಿಷತ್ತು ಅಥವಾ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರ ಅಥವಾ ಸಂದರ್ಭಾನುಸಾರವಾಗಿ ಯಾವುದೇ ಸಮಿತಿಯವರು ಕಾರ್ಯಸೂಚಿಯಲ್ಲಿ ಸೇರಿಸಬಹುದಾದ ಅಥವಾ ಸಭೆಯಲ್ಲಿ ಚರ್ಚೆಗೆ ತೆಗೆದುಕೊಂಡು ನಿರ್ಣಯವನ್ನು ಕೊಡಬಹುದಾದ ಎಲ್ಲಾ ವಿಷಯಗಳು ಮತ್ತು ಕಲಾಪಗಳು;

(ಸಿ) ``ಪ್ರಬಂಧಕರ ಮಂಡಳಿ'' ಎಂದರೆ, 24ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಪ್ರಬಂಧಕರ ಮಂಡಳಿ;

(ಡಿ) ``ವ್ಯವಸ್ಥಾಪನಾ ಮಂಡಳಿ'' ಎಂದರೆ 25ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿ;

(ಇ) ``ಕುಲಾಧಿಪತಿ'', ``ಕುಲಪತಿ'', ``ಸಹಕುಲಪತಿ'' ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ ಮತ್ತು ಸಹಕುಲಪತಿ;

(ಎಫ್) ``ಕ್ಯಾಂಪಸ್'' ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುವ ರಾಜ್ಯದೊಳಗೆ ಇರುವ ಒಂದು ಕ್ಯಾಂಪಸ್;

(ಜಿ) ``ಸಮಿತಿಗಳು'' ಎಂದರೆ, ಈ ಅಧಿನಿಯಮದಡಿಯಲ್ಲಿ ರೂಪಿಸಲಾದ ಸಮಿತಿಗಳು ಅಥವಾ ಸಂದರ್ಭಾನುಸಾರವಾಗಿ ವಿಶ್ವವಿದ್ಯಾಲಯದ ವಿವಿಧ ಕಾರ್ಯನಿರ್ವಾಹಕರು ರಚಿಸಿರುವ ಸಮಿತಿಗಳು ಮತ್ತು ಅದರಲ್ಲಿ ನಾಮನಿರ್ದೇಶನ ಸಮಿತಿ; ಹಣಕಾಸು ಸಮಿತಿ ಮತ್ತು ಅಂಥ ಇತರ ಸಮಿತಿಗಳು ಒಳಗೊಳ್ಳುತ್ತವೆ;

(ಎಚ್) ``ಘಟಕ ಕಾಲೇಜು'' ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುತ್ತಿರುವ ಒಂದು ಕಾಲೇಜು ಅಥವಾ ಸಂಸ್ಥೆ;

(ಐ) ``ಹಣಕಾಸು ಸಮಿತಿ'' ಎಂದರೆ, 28ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಹಣಕಾಸು ಸಮಿತಿ;

(ಜೆ) ``ಸರ್ಕಾರ'' ಎಂದರೆ, ಕರ್ನಾಟಕ ಸರ್ಕಾರ;

(ಕೆ) ``ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳು'' ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು, ಶಿಕ್ಷಕರ ಶಿಕ್ಷಣದ ರಾಷ್ಟ್ರೀಯ ಪರಿಷತ್ತು, ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಪರಿಷತ್ತು, ವಾಸ್ತುಶಿಲ್ಪ ಪರಿಷತ್ತು ಇಂಥವುಗಳಲ್ಲಿ ಉನ್ನತ ಶಿಕ್ಷಣದಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುವಂತೆ ನೋಡಿಕೊಳ್ಳುವುದಕ್ಕಾಗಿ ಗುಣಮಟ್ಟಗಳು ಮತ್ತು ಷರತ್ತುಗಳನ್ನು ವಿಧಿಸುವುದಕ್ಕಾಗಿ, ಕೇಂದ್ರ ಸರ್ಕಾರವು ಸ್ಥಾಪಿಸಿರುವ ಒಂದು ಸಂಸ್ಥೆ ಮತ್ತು ಇದು ಸರ್ಕಾರವನ್ನು ಒಳಗೊಳ್ಳುತ್ತದೆ;

(ಎಲ್) ``ನಿಯಮಿಸಲಾದುದು" ಎಂದರೆ, ಈ ಅಧಿನಿಯಮದಡಿಯಲ್ಲಿ ಸರ್ಕಾರವು ರಚಿಸಿದ ನಿಯಮಗಳ ಮೂಲಕ ನಿಯಮಿಸಲಾದುದು;

(ಎಂ) ``ಒಂದು ಘಟಕ ಕಾಲೇಜಿಗೆ ಸಂಬಂಧಪಟ್ಟಂತೆ ಪ್ರಾಂಶುಪಾಲರು" ಎಂದರೆ, ಘಟಕ ಕಾಲೇಜಿನ ಮುಖ್ಯಸ್ಥರು ಮತ್ತು ಪ್ರಾಂಶುಪಾಲರು ಇಲ್ಲದಿದ್ದಲ್ಲಿ ಅಥವಾ ನೇಮಕವಾದ ಪ್ರಾಂಶುಪಾಲರ ಗೈರುಹಾಜರಿಯಲ್ಲಿ, ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ತಾತ್ಕಾಲಿಕವಾಗಿ ನೇಮಕಗೊಂಡಿರುವ ಉಪಪ್ರಾಂಶುಪಾಲರು ಅಥವಾ ಯಾವುದೇ ಇತರ ವ್ಯಕ್ತಿಯೂ ಇದರಲ್ಲಿ ಒಳಗೊಳ್ಳುತ್ತಾರೆ;

(ಎನ್) ``ಕುಲಸಚಿವರು" ಎಂದರೆ, ವಿಶ್ವವಿದ್ಯಾಲಯದ ಕುಲಸಚಿವರು;

(ಒ) ``ಪ್ರಾದೇಶಿಕ ಕೇಂದ್ರ" ಎಂದರೆ, ರಾಜ್ಯದೊಳಗಿನ ಯಾವುದೇ ಪ್ರದೇಶದಲ್ಲಿನ ಅಧ್ಯಯನ ಕೇಂದ್ರಗಳ ಕಾರ್ಯವನ್ನು ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ಮಾಡುವ ಉದ್ದೇಶಕ್ಕಾಗಿ ಮತ್ತು ಅಂಥ ಕೇಂದ್ರಕ್ಕೆ ವ್ಯವಸ್ಥಾಪನಾ ಮಂಡಳಿಯು ವಹಿಸಿಕೊಡಬಹುದಾದ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸುವುದಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಅಥವಾ ನಿರ್ವಹಿಸಿಕೊಂಡುಬರುವ ಒಂದು ಕೇಂದ್ರ;

(ಪಿ) ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ ``ಪ್ರಾಯೋಜಕ ಪ್ರಾಧಿಕಾರ" ಅಥವಾ ``ಪ್ರಾಯೋಜಕ ಸಂಸ್ಥೆ" ಎಂದರೆ ಶ್ರೀ ಎ.ಎಸ್.ಕುಪ್ಪರಾಜು ಅಂಡ್ ಬ್ರದರ್ಸ್ ಚಾರಿಟಬಲ್ ಫೌಂಡೇಷನ್ ಟ್ರಸ್ಟ್;

(ಕ್ಯೂ) ``ರಾಜ್ಯ" ಎಂದರೆ, ಕರ್ನಾಟಕ ರಾಜ್ಯ;

(ಆರ್) ``ಪರಿನಿಯಮಗಳು" ಮತ್ತು ``ವಿನಿಯಮಗಳು" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಅನುಕ್ರಮವಾಗಿ ವಿಶ್ವವಿದ್ಯಾಲಯದ ಪರಿನಿಯಮಗಳು ಮತ್ತು ವಿನಿಯಮಗಳು;

(ಎಸ್) ``ಅಧ್ಯಯನ ಕೇಂದ್ರ" ಎಂದರೆ, ಶಿಕ್ಷಣದ ಸಂಬಂಧದಲ್ಲಿ ವಿದ್ಯಾರ್ಥಿಗಳಿಗೆ ಶಿಕ್ಷಣದ ಸಂಬಂಧದಲ್ಲಿ ಸಲಹೆಗಳನ್ನು ನೀಡುವ, ಸಮಾಲೋಚನೆ ಮಾಡುವ ಅಥವಾ ಇತರ ಯಾವುದೇ ನೆರವನ್ನು ನೀಡುವ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಮತ್ತು ನಿರ್ವಹಿಸಿಕೊಂಡುಬಂದ ರಾಜ್ಯದೊಳಗಿನ ಒಂದು ಕೇಂದ್ರ;

(ಟಿ) ``ಅಧ್ಯಾಪಕರು" ಎಂದರೆ, ಒಬ್ಬ ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಒಂದು ಘಟಕ ಕಾಲೇಜಿನಲ್ಲಿ ಬೋಧಿಸುವುದಕ್ಕೆ ಅಥವಾ ಸಂಶೋಧನೆ ನಡೆಸುವುದಕ್ಕೆ ಅಥವಾ ಸಂಶೋಧನೆಗೆ ಮಾರ್ಗದರ್ಶನ ನೀಡುವುದಕ್ಕೆ ನೇಮಕವಾದ ಅಂಥ ಇತರ ವ್ಯಕ್ತಿ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗವು ನಿರ್ದಿಷ್ಟಪಡಿಸಿದ ಗುಣಮಟ್ಟಗಳಿಗೆ ಅನುಸಾರವಾಗಿ ಇರುವ ಘಟಕ ಕಾಲೇಜಿನ ಪ್ರಾಂಶುಪಾಲರು ಇದರಲ್ಲಿ ಒಳಗೊಳ್ಳುತ್ತಾರೆ;

(ಯು) "ಟ್ರಸ್ಟ್" ಎಂದರೆ, ಭಾರತೀಯ ಟ್ರಸ್ಟ್ ಅಧಿನಿಯಮ, 1882ರಡಿ (1882ರ ಕೇಂದ್ರ ಅಧಿನಿಯಮ2) ನೊಂದಾಯಿಸಲಾದ ಶ್ರೀ ಎ.ಎಸ್.ಕುಪ್ಪರಾಜು ಅಂಡ್ ಬ್ರದರ್ಸ್ ಚಾರಿಟಬಲ್ ಫೌಂಡೇಷನ್ ಟ್ರಸ್ಟ್ ;

(ವಿ) ``ವಿಶ್ವವಿದ್ಯಾಲಯ" ಎಂದರೆ, ``ಏಟ್ರಿಯಾ ವಿಶ್ವವಿದ್ಯಾಲಯ";

(ಡಬ್ಲ್ಯು) ``ವಿಶ್ವವಿದ್ಯಾಲಯ ಅನುದಾನಗಳ ಆಯೋಗ" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) 4ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ಆಯೋಗ;

(ಎಕ್ಸ್) ``ಸಂದರ್ಶಕರು" ಎಂದರೆ, 13ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ವಿಶ್ವವಿದ್ಯಾಲಯದ ಸಂದರ್ಶಕರು.

## ಅಧ್ಯಾಯ- II
## ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

**3. ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ.-** (1) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಹಕ್ಕನ್ನು ಟ್ರಸ್ಟ್ ಹೊಂದಿರತಕ್ಕದ್ದು.

(2) ಟ್ರಸ್ಟ್, ರಾಜ್ಯ ಸರ್ಕಾರಕ್ಕೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವವನ್ನು ಸಲ್ಲಿಸತಕ್ಕದ್ದು.

(3) ಪ್ರಸ್ತಾವವು ಈ ಮುಂದಿನ ವಿವರಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಟ್ರಸ್ಟ್ನ ವಿವರಗಳೊಂದಿಗೆ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು;

(ii) ವಿಶ್ವವಿದ್ಯಾಲಯದ ವ್ಯಾಪ್ತಿ ಮತ್ತು ಸ್ಥಾನಮಾನ ಹಾಗೂ ಭೂಮಿಯ ಲಭ್ಯತೆ;

(iii) ಪ್ರಾರಂಭದ ದಿನಾಂಕದಿಂದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳಬೇಕೆಂದಿರುವ ಅಧ್ಯಯನ ಮತ್ತು ಸಂಶೋಧನಾ ಕಾರ್ಯಕ್ರಮಗಳ ಸ್ವರೂಪ ಮತ್ತು ಬಗೆಗಳು;

(iv) ಪ್ರಾರಂಭಿಸಬೇಕೆಂದು ಪ್ರಸ್ತಾಪಿಸಿರುವ ವ್ಯಾಸಂಗ ವಿಭಾಗಗಳ (ಫ್ಯಾಕಲ್ಟಿಗಳು) ಸ್ವರೂಪ ಅಧ್ಯಯನ ಕ್ರಮಗಳು ಮತ್ತು ಸಂಶೋಧನೆ;

(v) ಕಟ್ಟಡಗಳು, ಸಲಕರಣೆಗಳು ಮತ್ತು ರಚನಾ ಸೌಕರ್ಯಗಳನ್ನು ಒದಗಿಸುವಂಥ ಕ್ಯಾಂಪಸ್ ಅಭಿವೃದ್ಧಿ;

(vi) ಪ್ರಾರಂಭದ ದಿನಾಂಕದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಗಾಗಿ ಬಂಡವಾಳ ವೆಚ್ಚದ ಹಂತಗಳು;

(vii) ಬಾಬುವಾರು ಆವರ್ತಕ ವೆಚ್ಚ, ಆರ್ಥಿಕ ಮೂಲಗಳು ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ತಗಲುವ ಅಂದಾಜು ವೆಚ್ಚ;

(viii) ಸಂಪನ್ಮೂಲ ಸಂಗ್ರಹಣೆಗಾಗಿ ಯೋಜನೆ ಮತ್ತು ಅದಕ್ಕೆ ಬಂಡವಾಳದಿಂದ ತಗಲುವ ವೆಚ್ಚ ಹಾಗೂ ಪ್ರತಿಯೊಂದು ಮೂಲಕ್ಕೂ ಮರು ಸಂದಾಯ ಮಾಡುವ ರೀತಿ;

(ix) ವಿದ್ಯಾರ್ಥಿಗಳಿಂದ ಶುಲ್ಕ ವಸೂಲು ಮಾಡಿ ಆಂತರಿಕವಾಗಿ ನಿಧಿ ಸಂಗ್ರಹಿಸುವ ಯೋಜನೆ, ಸಲಹಾ ಸೇವೆ ಮತ್ತು ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಿಗೆ ಸಂಬಂಧಿಸಿದ ಇತರ ಚಟುವಟಿಕೆಗಳಿಂದ ನಿರೀಕ್ಷಿತ ವರಮಾನಗಳು ಮತ್ತು ಇತರ ನಿರೀಕ್ಷಿತ ವರಮಾನಗಳು;

(x) ಘಟಕವೊಂದಕ್ಕೆ ತಗಲುವ ವೆಚ್ಚದ ವಿವರಗಳು, ಆರ್ಥಿಕವಾಗಿ ದುರ್ಬಲವಾದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕ, ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿ ವೇತನದಲ್ಲಿ ನೀಡುವ ರಿಯಾಯಿತಿ ಅಥವಾ ವಿನಾಯತಿಯ ಪರಿಮಿತಿಯ ವಿವರಗಳನ್ನು ಮತ್ತು ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳಿಗೆ ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳು ಪ್ರಾಯೋಜಿಸಿದ ವಿದ್ಯಾರ್ಥಿಗಳಿಗೆ ಮತ್ತು ಭಾರತವನ್ನುಳಿದು ಇತರ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ವಿಧಿಸತಕ್ಕ ಶುಲ್ಕದ ದರಗಳು ಬೇರೆ ಬೇರೆ ಇದ್ದಲ್ಲಿ ಅವುಗಳನ್ನು ಸೂಚಿಸುವ ಶುಲ್ಕ ರಚನೆಯ ವಿವರಗಳು;

(xi) ಸಂಬಂಧಪಟ್ಟ ಶಿಕ್ಷಣ ವಿಭಾಗದಲ್ಲಿ ಪ್ರಾಯೋಜಕ ಟ್ರಸ್ಟ್ ದೊರಕಿಸಿಕೊಡಲಿರುವ ವರ್ಷಗಳ ಅನುಭವ ಮತ್ತು ಪರಿಣಿತಿ ಹಾಗೂ ಅದರ ಹಣಕಾಸಿನ ಸಂಪನ್ಮೂಲಗಳು;

(xii) ವಿಶ್ವವಿದ್ಯಾಲಯದಲ್ಲಿರುವ ಅಧ್ಯಯನ ಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕಾಗಿ ಇರುವ ವ್ಯವಸ್ಥೆ; ಮತ್ತು

(xiii) ವಿಶ್ವವಿದ್ಯಾಲಯವು ಸ್ಥಾಪನೆಯಾಗುವುದಕ್ಕೆ ಮೊದಲು ಈ ಅಧಿನಿಯಮದ ಅಡಿಯಲ್ಲಿ ನೆರವೇರಿಸಬೇಕೆಂದು ರಾಜ್ಯ ಸರ್ಕಾರವು ಅಗತ್ಯಪಡಿಸಬಹುದಾದ ಅಂಥ ಇತರ ಷರತ್ತುಗಳ ನೆರವೇರಿಕೆಯ ಹಂತ.

(4) ವಿಶ್ವವಿದ್ಯಾಲಯದ ಸ್ಥಾಪನೆಗೆ ರಾಜ್ಯ ಸರ್ಕಾರಕ್ಕೆ ಶಿಫಾರಸ್ಸುಗಳನ್ನು ಮಾಡಲು ಪ್ರಾಯೋಜಕ ಟ್ರಸ್ಟ್‌ನಿಂದ ಸ್ವೀಕರಿಸಲಾದ ಪ್ರಸ್ತಾವಗಳನ್ನು ಪರಿಶೀಲಿಸುವುದಕ್ಕಾಗಿ ರಾಜ್ಯ ಸರ್ಕಾರವು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಪದನಿಮಿತ್ತ ಸದಸ್ಯರಾದ ಮೂವರು ಸದಸ್ಯರುಗಳನ್ನು ಒಳಗೊಂಡ ಒಂದು ಶೋಧನಾ ಸಮಿತಿಯನ್ನು ರಚಿಸತಕ್ಕದ್ದು.

**4. ವಿಶ್ವವಿದ್ಯಾಲಯದ ಸ್ಥಾಪನೆ.-** (1) ರಾಜ್ಯ ಸರ್ಕಾರವು ಶೋಧನಾ ಸಮಿತಿಯು ಮಾಡಿದ ಶಿಫಾರಸ್ಸುಗಳನ್ನು ಪರಿಶೀಲಿಸಿದ ತರುವಾಯ ಮತ್ತು ತಾನು ಅವಶ್ಯವೆಂದು ಭಾವಿಸುವಂಥ

ವಿಚಾರಣೆಯನ್ನು ನಡೆಸಿದ ತರುವಾಯ, ಈ ಮುಂದಿನವುಗಳನ್ನು ಹೊಂದಿದೆ ಎಂದು ಮನಗಾಣತಕ್ಕದ್ದು, ಎಂದರೆ:-

(i) ಸಾಕಷ್ಟು ಮೂಲ ಸೌಕರ್ಯಗಳೊಂದಿಗೆ, ವಿಶ್ವವಿದ್ಯಾಲಯವನ್ನು ನಡೆಸಲು ಸೊಸೈಟಿಯ ಸಾಮರ್ಥ್ಯ;

(ii) ಅದು ಇರುವ ಸ್ಥಳದ ಅನುಸಾರವಾಗಿ ಕೆಳಗೆ ನಿರ್ದಿಷ್ಟಪಡಿಸಿದ ವ್ಯಾಪ್ತಿಯಲ್ಲಿ ಭೂಮಿಯ ಮಾಲಿಕತ್ವವನ್ನು ಹೊಂದಿದೆ, ಎಂದರೆ :-

(ಎ) ಅದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯೊಳಗಿದ್ದರೆ ಇಪ್ಪತ್ತೈದು ಎಕರೆ ಭೂಮಿ;

(ಬಿ) ಅದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮಿತಿಯ ಹೊರಗೆ ಆದರೆ ಬೆಂಗಳೂರು ಮೆಟ್ರೋಪಾಲಿಟನ್ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಪ್ರದೇಶದ ಒಳಗಿದ್ದರೆ ನಲವತ್ತು ಎಕರೆ ಭೂಮಿ; ಮತ್ತು

(ಸಿ) (ಎ) ಮತ್ತು (ಬಿ) ಖಂಡಗಳಲ್ಲಿ ನಿರ್ದಿಷ್ಟಪಡಿಸಿದ ಸ್ಥಳಗಳನ್ನು ಹೊರತುಪಡಿಸಿ ಇತರ ಸ್ಥಳಗಳಲ್ಲಿ ಐವತ್ತು ಎಕರೆಗಳಿಗೆ ಕಡಿಮೆಯಿಲ್ಲದಷ್ಟು ಭೂಮಿ.

ಮೇಲೆ ನಿರ್ದಿಷ್ಟಪಡಿಸಿದ ಭೂಮಿಯು ಏಕ ಘಟಕ (ಸಿಂಗಲ್ ಬ್ಲಾಕ್) ದಲ್ಲಿರತಕ್ಕದ್ದು ಮತ್ತು ಇದು ಸಂಬಂಧಪಟ್ಟ ಟ್ರಸ್ಟ್ ಅಥವಾ ಸಂಸ್ಥೆ ಅಥವಾ ವಿಶ್ವವಿದ್ಯಾಲಯದ ಹೆಸರಿನಲ್ಲಿರತಕ್ಕದ್ದು. 3ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ಅಗತ್ಯಪಡಿಸಲಾದಂತೆ ಒದಗಿಸಿದ ವಿವರಗಳ ಆಧಾರದ ಮೇಲೆ ಸರ್ಕಾರವು 48ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಬೇಕೆಂದು ಟ್ರಸ್ಟ್‌ಗೆ ನಿರ್ದೇಶನ ನೀಡಬಹುದು;

(iii) ನಿರ್ದಿಷ್ಟಪಡಿಸಿದ ಶಾಸನಬದ್ಧ ನಿಧಿಗಳ ಸೃಜಿಸಲು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳನ್ನುನಡೆಸಲು ಸಾಕಷ್ಟು ಹಣಕಾಸಿನ ಸಂಪನ್ಮೂಲಗಳನ್ನು: ಮತ್ತು

(iv) ಉನ್ನತ ಶಿಕ್ಷಣ ಸಂಸ್ಥೆಗಳನ್ನು ನಡೆಸುವಲ್ಲಿ ಅನುಭವ ಅಥವಾ ಪರಿಣಿತಿ.

(2) ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಸ್ಥಾಪನೆಯ ತರುವಾಯ, ರಾಜ್ಯ ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, ಏಟ್ರಿಯಾ ವಿಶ್ವವಿದ್ಯಾಲಯ ಎಂಬ ಹೆಸರಿನ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ರಾಜ್ಯದಲ್ಲಿ ಸ್ಥಾಪಿಸುವುದಕ್ಕೆ ಮಂಜೂರಾತಿಯನ್ನು ನೀಡಬಹುದು.

(3) ವಿಶ್ವವಿದ್ಯಾಲಯದ ಕೇಂದ್ರ ಕಾರ್ಯಸ್ಥಾನವು ಬೆಂಗಳೂರಿನಲ್ಲಿ ಇರತಕ್ಕದ್ದು. ರಾಜ್ಯ ಸರ್ಕಾರದ ಪೂರ್ವಾನುಮತಿಯನ್ನು ಪಡೆದುಕೊಳ್ಳುವುದಕ್ಕೊಳಪಟ್ಟಿರತಕ್ಕದ್ದು ಹಾಗೂ ವಿಶ್ವವಿದ್ಯಾಲಯ ಅನುದಾನಗಳ ಆಯೋಗದ ಗುಣಮಟ್ಟಗಳಿಗನುಸಾರವಾಗಿ ವಿಶ್ವವಿದ್ಯಾಲಯದ ಸ್ಥಾಪನೆಯಾದ ಐದು ವರ್ಷಗಳ ತರುವಾಯ ವಿಶ್ವವಿದ್ಯಾಲಯವು ತನ್ನ ಕ್ಯಾಂಪಸ್ಸುಗಳನ್ನು ಅಥವಾ ಪ್ರಾದೇಶಿಕ ಕೇಂದ್ರಗಳನ್ನು, ಅಧ್ಯಯನ ಕೇಂದ್ರಗಳನ್ನು ಕರ್ನಾಟಕದಲ್ಲಿ ಎಲ್ಲಿಯಾದರೂ ಹೊಂದಿರತಕ್ಕದ್ದು.

(4) ಮೊದಲ ಕುಲಾಧಿಪತಿಯವರು, ಮೊದಲ ಕುಲಪತಿಯವರು, ಪ್ರಬಂಧಕ ಮಂಡಳಿಯ ಮೊದಲ ಸದಸ್ಯರುಗಳು, ವ್ಯವಸ್ಥಾಪನಾ ಮಂಡಳಿಯ ಹಾಗೂ ಶೈಕ್ಷಣಿಕ ಪರಿಷತ್ತಿನ ಮೊದಲ ಸದಸ್ಯರುಗಳು ಮತ್ತು ಇನ್ನು ಮುಂದೆ, ಅಂಥ ಅಧಿಕಾರಿಗಳು ಅಥವಾ ಸದಸ್ಯರುಗಳಾಗಬಹುದಾದಂಥ ಎಲ್ಲಾ ವ್ಯಕ್ತಿಗಳು, ಅಂಥ ಪದ ಅಥವಾ ಸದಸ್ಯತ್ವವನ್ನು ಹೊಂದಿರುವುದು ಮುಂದುವರೆಯುವವರೆಗೆ, ಒಂದು ನಿಗಮಿತ ನಿಕಾಯವನ್ನು ರಚಿಸತಕ್ಕದ್ದು ಮತ್ತು ಅದು ವಿಶ್ವವಿದ್ಯಾಲಯದ ಹೆಸರಿನಲ್ಲಿ ದಾವೆ ಹೂಡಬಹುದು ಮತ್ತು ದಾವೆಗೊಳಗಾಗಬಹುದು.

(5) (2)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯವು ಸ್ಥಾಪನೆಗೆ ಮಂಜೂರಾತಿಯಾದ ಮೇಲೆ, ವಿಶ್ವವಿದ್ಯಾಲಯದ ಉದ್ದೇಶಕ್ಕಾಗಿ, ಪ್ರಾಯೋಜಕ ಟ್ರಸ್ಟ್ ಆರ್ಜಿಸಿದ, ಸೃಜಿಸಿದ, ಏರ್ಪಾಟು ಮಾಡಿಕೊಂಡ ಅಥವಾ ಕಟ್ಟಲ್ಪಟ್ಟ ಭೂಮಿ ಮತ್ತು ಇತರ ಸ್ಥಿರ ಮತ್ತು ಚರ ಸ್ವತ್ತು, ವಿಶ್ವವಿದ್ಯಾಲಯದಲ್ಲಿ ನಿಹಿತವಾಗಿರತಕ್ಕದ್ದು.

(6) ವಿಶ್ವವಿದ್ಯಾಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದ ಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂಥ ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

(7) ವಿಶ್ವವಿದ್ಯಾಲಯದಲ್ಲಿನ ಭೂಮಿ, ಕಟ್ಟಡ ಮತ್ತು ಇತರ ಸ್ವತ್ತುಗಳನ್ನು ವಿಶ್ವವಿದ್ಯಾಲಯದ ಉದ್ದೇಶಗಳಿಗೆ ಆನುಷಂಗಿಕವಾಗಿರುವುದನ್ನು ಹೊರತುಪಡಿಸಿ ಇತರ ಯಾವುದೇ ಉದ್ದೇಶಕ್ಕಾಗಿ ಬಳಸತಕ್ಕದ್ದಲ್ಲ.

**5. ಅನುದಾನಗಳು ಮತ್ತು ಹಣಕಾಸು ನೆರವು.-** ವಿಶ್ವವಿದ್ಯಾಲಯವು ಸ್ವಂತ ಧನಮೂಲವುಳ್ಳ ಲಾಭರಹಿತ ಸಂಸ್ಥೆಯಾಗಿರತಕ್ಕದ್ದು ರಾಜ್ಯದಿಂದ ಅಥವಾ ರಾಜ್ಯದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಇತರ ಸಂಸ್ಥೆ ಅಥವಾ ನಿಗಮದಿಂದ ಯಾವುದೇ ನಿರ್ವಹಣಾ ಸಹಾಯ ಅನುದಾನ ಅಥವಾ ಯಾವುದೇ ಹಣಕಾಸು ನೆರವನ್ನು ಹಕ್ಕಿನಿಂದ ಕೇಳತಕ್ಕದ್ದಲ್ಲ ಅಥವಾ ಅದನ್ನು ಪಡೆಯಲು ಹಕ್ಕನ್ನು ಹೊಂದಿರತಕ್ಕದ್ದಲ್ಲ:

ಪರಂತು, ರಾಜ್ಯವು,-

(ಎ) ಇತರ ರಾಜ್ಯ ಸರ್ಕಾರದ ಸಂಘಟನೆಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿರುವಂಥದ್ದೇ ಸಂಶೋಧನೆ, ಅಭಿವೃದ್ಧಿ ಮತ್ತಿತರ ಚಟುವಟಿಕೆಗಳಿಗಾಗಿ; ಅಥವಾ

(ಬಿ) ರಾಜ್ಯ ಸರ್ಕಾರದಿಂದ ನೆರವನ್ನು ಪಡೆಯುವ ಯಾವುದೇ ನಿರ್ದಿಷ್ಟ ಸಂಶೋಧನೆ ಅಥವಾ ಕಾರ್ಯಕ್ರಮಗಳಿಗಾಗಿ; ಅಥವಾ

(ಸಿ) ರಾಜ್ಯ ಕಾರ್ಯನೀತಿಯ ಬದಲಾವಣೆಗೆ ಒಳಪಟ್ಟು ಅಥವಾ ಅನ್ಯಥಾ ಇದೇ ಬಗೆಯ ವಿಶ್ವವಿದ್ಯಾಲಯಗಳ ಪ್ರಯೋಜನಕ್ಕಾಗಿ,

- ಅನುದಾನದ ಮೂಲಕ ಅಥವಾ ಅನ್ಯಥಾ ಹಣಕಾಸು ಬೆಂಬಲವನ್ನು ಒದಗಿಸಬಹುದು:

ಮತ್ತು ಪರಂತು, ವಿಶ್ವವಿದ್ಯಾಲಯವು, ಯಾವುದೇ ಇತರ ಮೂಲದಿಂದ ಯಾವುದೇ ಆರ್ಥಿಕ ನೆರವನ್ನು ಸ್ವೀಕರಿಸಬಹುದು.

**6. ಘಟಕ ಕಾಲೇಜು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಅಥವಾ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದಕ್ಕೆ ಅಧಿಕಾರ.-** ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಐದು ವರ್ಷಗಳನ್ನು ಪೂರ್ಣಗೊಳಿಸಿದ ನಂತರ, ವಿಶ್ವವಿದ್ಯಾಲಯ ಅನುದಾನ ಆಯೋಗದ ಮತ್ತು ಇತರ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ಗುಣಮಟ್ಟಗಳಿಗೆ ಒಳಪಟ್ಟು, ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ, ವಿಶ್ವವಿದ್ಯಾಲಯವು, ರಾಜ್ಯದಲ್ಲಿ ತನಗೆ ಸೂಕ್ತವೆನಿಸುವಂಥ ಸ್ಥಳಗಳಲ್ಲಿ ಘಟಕ ಕಾಲೇಜುಗಳು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದಿರಬಹುದು.

**7. ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು.-** ವಿಶ್ವವಿದ್ಯಾಲಯವು, ತನ್ನ ಭವಿಷ್ಯದ್‌ದೃಷ್ಟಿ ಮತ್ತು ಧ್ಯೇಯೋದ್ದೇಶಗಳನ್ನು ಸಾಧಿಸಲು ಈ ಮುಂದಿನಂತೆ ವಿವಿಧ ಬಗೆಯ ಕಾರ್ಯತಂತ್ರಗಳನ್ನು ಕೈಗೊಳ್ಳಬಹುದು:-

(i) ಇತರ ಸಂಬಂಧಿತ ಅಭಿವೃದ್ಧಿ ಕ್ಷೇತ್ರಗಳನ್ನು ಒಳಗೊಂಡಂತೆ ತಾಂತ್ರಿಕ ಶಿಕ್ಷಣ, ಹಣಕಾಸು, ವ್ಯವಸ್ಥಾಪನೆ, ವಾಣಿಜ್ಯ, ಬೋಧನೆ ಕಲಿಕೆ, ಮುಕ್ತ ಕಲೆಗಳು, ಮಾನವಿಕಗಳು, ಕಲೆ, ವಿವಿಧ ವ್ಯಾಸಂಗ ಕ್ರಮಗಳಲ್ಲಿ ಶಿಕ್ಷಣ, ಬೋಧನೆ, ತರಬೇತಿ, ಸಂಶೋಧನೆ, ಸಮಾಲೋಚನೆ ಮತ್ತು ಅಭಿವೃದ್ಧಿಯನ್ನು ಕಲ್ಪಿಸುವುದು ಹಾಗೂ ಈ ಕ್ಷೇತ್ರಗಳಲ್ಲಿ ಸಂಶೋಧನೆ, ಪ್ರಗತಿ ಮತ್ತು ಜ್ಞಾನ ಪ್ರಸಾರಕ್ಕೆ ಉಪಬಂಧಗಳನ್ನು ಕಲ್ಪಿಸುವುದು;

(ii) ಉನ್ನತ ಮತ್ತು ವೃತ್ತಿ ಶಿಕ್ಷಣದಲ್ಲಿ ಬೋಧಕರಿಗಾಗಿ, ಆಡಳಿತಗಾರರಿಗಾಗಿ ಹಾಗೂ ಸರ್ಕಾರಿ, ಸಾರ್ವಜನಿಕ ಮತ್ತು ಖಾಸಗಿ ವಲಯದಲ್ಲಿ ಕೆಲಸ ಮಾಡುವ ವೃತ್ತಿನಿರತರಿಗಾಗಿ ಮತ್ತು ಇತರ ವ್ಯವಸ್ಥೆಗಳಲ್ಲಿನ ಅಭಿವೃದ್ಧಿ ವೃತ್ತಿ ನಿರತರಿಗಾಗಿ ಉನ್ನತ ಗುಣಮಟ್ಟದ ತರಬೇತಿ, ಸಾಮರ್ಥ್ಯ ವೃದ್ಧಿ ಹಾಗೂ ಬೆಳವಣಿಗೆ ವ್ಯವಸ್ಥೆಗಳನ್ನು ವಿನ್ಯಾಸಗೊಳಿಸುವುದು ಮತ್ತು ಪುರಸ್ಕರಿಸುವುದು ;

(iii) ಗುಣಮಟ್ಟದ ಶಿಕ್ಷಣಕ್ಕೆ ಕೊಡುಗೆಯನ್ನು ನೀಡಲು ಸಂಪನ್ಮೂಲ ಕೇಂದ್ರಗಳನ್ನು ಅಭಿವೃದ್ಧಿಪಡಿಸುವುದು;

(iv) ಕ್ಯಾಂಪಸ್‌ಗಳನ್ನು ಸ್ಥಾಪಿಸುವುದು ಮತ್ತು ಐದು ವರ್ಷಗಳ ತರುವಾಯ ಕರ್ನಾಟಕದ ಹಲವು ಸ್ಥಳಗಳಲ್ಲಿ ಅಧ್ಯಯನ ಕೇಂದ್ರಗಳು, ಘಟಕ ಕಾಲೇಜುಗಳು ಮತ್ತು ಪ್ರಾದೇಶಿಕ ಕೇಂದ್ರಗಳನ್ನು ಹೊಂದುವುದು ಹಾಗೂ ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ವಿಶ್ವವಿದ್ಯಾಲಯ ಅನುದಾನಗಳ ಆಯೋಗದ ರೂಢಿಗಳ ಅನುಸಾರವಾಗಿ ತಾಂತ್ರಿಕ ಮತ್ತು ವೃತ್ತಿ ಶಿಕ್ಷಣ ಹಾಗೂ ಸಾಮಾಜಿಕ ಮತ್ತು ಮಾನವ ಅಭಿವೃದ್ಧಿಗಳಲ್ಲಿ ಶೈಕ್ಷಣಿಕ ಬದಲಾವಣೆಗಾಗಿ ಕೊಡುಗೆ ನೀಡುವುದು ಮತ್ತು ಅದರ ಅರ್ಥಸುವಿಕೆಯನ್ನು ಅಭಿವೃದ್ಧಿಗೊಳಿಸುವುದು;

(v) ಮೌಲ್ಯಮಾಪನದ ವಿವಿಧ ವಿಧಾನಗಳ ಮೂಲಕ ಮಾಡಿದ ಮೌಲ್ಯಮಾಪನಕ್ಕೆ ಅನುಸಾರವಾಗಿ ಶಿಕ್ಷಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದುದರ ಆಧಾರದ ಮೇಲೆ ಪದವಿಗಳನ್ನು, ಡಿಪ್ಲೋಮೋಗಳನ್ನು, ಪ್ರಮಾಣಪತ್ರಗಳನ್ನು ಮತ್ತು ಯಶೋಪತ್ರ ಪ್ರದಾನದಂಥ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(vi) ವಿದ್ಯಾರ್ಥಿಗಳಿಗೆ, ಬೋಧಕ ವೃಂದದ (ಫ್ಯಾಕಲ್ಟಿ) ಸದಸ್ಯರಿಗೆ ಮತ್ತು ಇತರರಿಗೆ ನಿರ್ದಿಷ್ಟ ಶೈಕ್ಷಣಿಕ ಮತ್ತು ಸಂಶೋಧನಾ ಕಾರ್ಯಕ್ರಮಗಳನ್ನು, ತರಬೇತಿ ಕಾರ್ಯಕ್ರಮಗಳನ್ನು ಮತ್ತು ವಿನಿಮಯ ಕಾರ್ಯಕ್ರಮಗಳನ್ನು ಪರಿಕಲ್ಪಿಸಲು, ವಿನ್ಯಾಸಗೊಳಿಸಲು, ಅಭಿವೃದ್ಧಿಪಡಿಸಲು ಇತರ ಯಾವುದೇ ವಿಶ್ವವಿದ್ಯಾಲಯಗಳು, ಸಂಶೋಧನಾ ಸಂಸ್ಥೆಗಳು, ಲಾಭರಹಿತ ಸಂಸ್ಥೆಗಳು, ಕೈಗಾರಿಕಾ ಸಂಸ್ಥೆಗಳು, ವೃತ್ತಿಪರ ಸಂಸ್ಥೆಗಳು ಅಥವಾ ಇತರ ಸಂಸ್ಥೆಗಳೊಂದಿಗೆ ಸಹಯೋಗವನ್ನು ಹೊಂದುವುದು;

(vii) ಉಪನ್ಯಾಸ ಮಾಲಿಕೆಗಳು, ವಿಚಾರ ಸಂಕಿರಣಗಳು, ಸಮ್ಮೇಳನಗಳು, ಕಾರ್ಯಾಂಗ ಶಿಕ್ಷಣ ಕಾರ್ಯಕ್ರಮಗಳು, ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳು, ಪ್ರಕಟಣೆಗಳು ಮತ್ತು ತರಬೇತಿ ಕಾರ್ಯಕ್ರಮಗಳು ಮತ್ತು ಕಾರ್ಯಸೂಚಿಗಳ ಮೂಲಕ ಜ್ಞಾನ ಪ್ರಸಾರ ಮಾಡುವುದು ಮತ್ತು ಶಿಕ್ಷಣ ಮತ್ತು ತತ್ಸಂಬಂಧಿತ ಅಭಿವೃದ್ಧಿ ಕ್ಷೇತ್ರಗಳ ವಿಷಯಗಳ ಬಗ್ಗೆ ಸಾರ್ವಜನಿಕ ಚರ್ಚೆಯನ್ನು ಏರ್ಪಡಿಸುವುದು;

(viii) ರಾಜ್ಯ ಸರ್ಕಾರದ ಪೂರ್ವ ಅನುಮತಿಯೊಂದಿಗೆ, ಉತ್ತಮ ಗುಣಮಟ್ಟದ ಇತರ ಯಾವುವೇ ಸಂಸ್ಥೆಗಳೊಂದಿಗೆ ಸಹಭಾಗಿಗಳಾಗಿ ವಿಶ್ವವಿದ್ಯಾಲಯದ ಬೋಧಕ ವೃಂದ (ಫ್ಯಾಕಲ್ಟಿ) ಮತ್ತು ಸಂಶೋಧಕರ ಅಭಿವೃದ್ಧಿ ಮತ್ತು ತರಬೇತಿಗಾಗಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು;

(ix) ರಾಜ್ಯ ಸರ್ಕಾರದ ಪೂರ್ವ ಅನುಮೋದನೆಯೊಡನೆ, ಯಾವುದೇ ಸಂಸ್ಥೆಯೊಂದಿಗೆ ಸಹಯೋಗ ಹೊಂದಿ ಸಂಶೋಧನೆಯನ್ನು ಮತ್ತು ಹೊಸತನವನ್ನು ಬೆಳಕಿಗೆ ತರುವುದು;

(x) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದಕ್ಕಾಗಿ ಮತ್ತು ಉತ್ತೇಜಿಸುವುದಕ್ಕಾಗಿ ಅವಶ್ಯಕವಾದ ಮತ್ತು ಯುಕ್ತವಾದ ಕ್ರಮಗಳನ್ನು ಕೈಗೊಳ್ಳುವುದು;

(xi) ಶಿಕ್ಷಣ ಮತ್ತು ಇತರ ಅಭಿವೃದ್ಧಿ ವಲಯಗಳನ್ನು ವಿಸ್ತರಿಸುವುದಕ್ಕಾಗಿ ಸರ್ಕಾರವು ಅನುಮೋದಿಸಬಹುದಾದಂತೆ ಯಾವುವೇ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದು.

**8. ವಿಶ್ವವಿದ್ಯಾಲಯದ ಅಧಿಕಾರಗಳು.-** ವಿಶ್ವವಿದ್ಯಾಲಯವು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗೆ ಅನುಸಾರವಾಗಿ ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿರ್ಧರಿಸಬಹುದಾದಂತೆ ವಿಶ್ವವಿದ್ಯಾಲಯದ ಸ್ಥಾಪನೆಯ ದಿನಾಂಕದಿಂದ ಐದು ವರ್ಷಗಳ ತರುವಾಯ ಕ್ಯಾಂಪಸ್ಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಕರ್ನಾಟಕದಲ್ಲಿ ಸ್ಥಾಪಿಸುವುದು ಮತ್ತು ನಿರ್ವಹಿಸುವುದು;

(ii) ವಿಶ್ವವಿದ್ಯಾಲಯದ ಉದ್ದೇಶವನ್ನು ಕಾರ್ಯರೂಪಕ್ಕೆ ತರುವಲ್ಲಿ ಅಗತ್ಯವಾಗಬಹುದಾದ ಅಥವಾ ಕಾರ್ಯಸಾಧ್ಯವಾಗಬಹುದಾದ ಎಲ್ಲಾ ಅಂಥ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು;

(iii) ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಮತ್ತು ಷರತ್ತುಗಳಿಗೊಳಪಟ್ಟು ಪದವಿಗಳು ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರದಾನಮಾಡುವುದು;

(iv) ಪರಿನಿಯಮಗಳನುಸಾರವಾಗಿ ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿ ವೇತನಗಳು ಮತ್ತು ಬಹುಮಾನಗಳು, ಅವಾರ್ಡುಗಳು, ಪಾರಿತೋಷಕಗಳು ಇತ್ಯಾದಿಗಳನ್ನು ಸ್ಥಾಪಿಸುವುದು ಮತ್ತು ನೀಡುವುದು;

(v) ಪರಿನಿಯಮಗಳಲ್ಲಿ ಅಥವಾ ಸಂದರ್ಭಾನುಸಾರವಾಗಿ ನಿಯಮಗಳಲ್ಲಿ ನಿಗದಿಪಡಿಸಬಹುದಾದ ಅಂಥ ಶುಲ್ಕಗಳು, ಬಿಲ್ಲುಗಳು, ಖರೀದಿ ಪಟ್ಟಿಗಳನ್ನು ಕೇಳಿಪಡೆದುಕೊಳ್ಳುವುದು ಮತ್ತು ಸ್ವೀಕರಿಸುವುದು ಹಾಗೂ ಚಾರ್ಜುಗಳನ್ನು ವಸೂಲು ಮಾಡುವುದು;

(vi) ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಪಠ್ಯೇತರ ಚಟುವಟಿಕೆಗಳಿಗೆ ಉಪಬಂಧಗಳನ್ನು ಕಲ್ಪಿಸುವುದು;

(vii) ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಕ್ಯಾಂಪಸುಗಳ, ಪ್ರಾದೇಶಿಕ ಕೇಂದ್ರಗಳ, ಅಧ್ಯಯನ ಕೇಂದ್ರಗಳ ಫ್ಯಾಕಲ್ಟಿ, ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವುದು;

(viii) ವಿಶ್ವವಿದ್ಯಾಲಯದ ಅಥವಾ ಒಂದು ಘಟಕ ಕಾಲೇಜಿನ ಅಥವಾ ಕ್ಯಾಂಪಸ್ಸಿನ, ಪ್ರಾದೇಶಿಕ ಕೇಂದ್ರಗಳ ಮತ್ತು ಅಧ್ಯಯನ ಕೇಂದ್ರದ ಉದ್ದೇಶಕ್ಕಾಗಿ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದಿರುವ, ಯಾವುದೇ ರೀತಿಯ ಸ್ವಯಂ ದೇಣಿಗೆಗಳು ಮತ್ತು ಕೊಡುಗೆಗಳನ್ನು ಸ್ವೀಕರಿಸುವುದು ಮತ್ತು ಟ್ರಸ್ಟ ಮತ್ತು ದತ್ತಿ ಸ್ವತ್ತುಗಳೂ ಸೇರಿದಂತೆ, ಯಾವುದೇ ಚರ ಅಥವಾ ಸ್ಥಿರ ಸ್ವತ್ತನ್ನು ಆರ್ಜಿಸುವುದು, ಹೊಂದಿರುವುದು, ನಿರ್ವಹಿಸುವುದು, ನಡೆಸುವುದು ಮತ್ತು ಹಸ್ತಾಂತರ ಮಾಡುವುದು;

(ix) ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸಿಕೊಂಡು ಬರುವುದು ಹಾಗೂ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ ವಿದ್ಯಾರ್ಥಿಗಳಿಗೆ ವಸತಿ ಸ್ಥಳಗಳನ್ನು ಗುರುತಿಸುವುದು;

(x) ವಸತಿಯ ಮೇಲ್ವಿಚಾರಣೆ ಮಾಡುವುದು ಮತ್ತು ನಿಯಂತ್ರಣ ಮಾಡುವುದು ಹಾಗೂ ವಿದ್ಯಾರ್ಥಿಗಳು ಮತ್ತು ಎಲ್ಲಾ ಪ್ರವರ್ಗಗಳ ಸಿಬ್ಬಂದಿಗಳಲ್ಲಿ ಶಿಸ್ತು ನಿಯಂತ್ರಣ ಮಾಡುವುದು ಮತ್ತು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ನಡತೆ ಸಂಹಿತೆಯನ್ನು ರೂಪಿಸುವುದೂ ಒಳಗೊಂಡಂತೆ, ಅಂಥ ಸಿಬ್ಬಂದಿಗಳ ಸೇವಾಷರತ್ತುಗಳನ್ನು ನಿರೂಪಿಸುವುದು;

(xi) ಶೈಕ್ಷಣಿಕ, ಆಡಳಿತಾತ್ಮಕ ಮತ್ತು ಬೆಂಬಲ ಸಿಬ್ಬಂದಿಯ ಹುದ್ದೆಗಳನ್ನು ಮತ್ತು ಇತರ ಅವಶ್ಯ ಹುದ್ದೆಗಳನ್ನು ಸೃಜಿಸುವುದು;

(xii) ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ಉದ್ದೇಶಗಳಿಗಾಗಿ ಇತರ ವಿಶ್ವವಿದ್ಯಾಲಯಗಳೊಡನೆ ಸಹಕರಿಸುವುದು ಮತ್ತು ಸಹಯೋಗ ಹೊಂದುವುದು;

(xiii) ಶಿಕ್ಷಕರಿಗೆ, ಪಠ್ಯ ಬರಹಗಾರರಿಗೆ, ಮೌಲ್ಯಮಾಪಕರಿಗೆ ಮತ್ತಿತರ ಶೈಕ್ಷಣಿಕ ಸಿಬ್ಬಂದಿಗೆ ಪುನರ್ಮನನ ವ್ಯಾಸಂಗಕ್ರಮಗಳು, ಪರಿಚಯಾತ್ಮಕ ವ್ಯಾಸಂಗ ಕ್ರಮಗಳು, ಕಾರ್ಯಾಗಾರಗಳು, ವಿಚಾರಗೋಷ್ಠಿಗಳು ಮತ್ತಿತರ ಕಾರ್ಯಕ್ರಮಗಳನ್ನು ಏರ್ಪಡಿಸುವುದು ಮತ್ತು ನಡೆಸುವುದು;

(xiv) ಶೈಕ್ಷಣಿಕ ಪರಿಷತ್ತಿನ ಅನುಮೋದನೆಯೊಂದಿಗೆ ವಿಶ್ವವಿದ್ಯಾಲಯಕ್ಕೆ ಅಥವಾ ಘಟಕ ಕಾಲೇಜಿಗೆ, ಪ್ರಾದೇಶಿಕ ಕೇಂದ್ರಗಳಿಗೆ, ಅಧ್ಯಯನ ಕೇಂದ್ರಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮಾನಕ ಗುಣಮಟ್ಟಗಳನ್ನು ನಿರ್ಧರಿಸುವುದು ಮತ್ತು ಈ ಅಧಿನಿಯಮದಲ್ಲಿ ಕಲ್ಪಿಸಿದ ವ್ಯಾಪ್ತಿಗಿಂತ ಕಡಿಮೆಯಿಲ್ಲದಂತೆ ಕರ್ನಾಟಕದ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನೀಡುವುದು;

(xv) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಕಾರ್ಯರೂಪಕ್ಕೆ ತರಲು ಅವಶ್ಯವಾಗಬಹುದಾದಂಥ ಇತರ ಎಲ್ಲಾ ಕ್ರಮಗಳನ್ನು ಅಥವಾ ಕಾರ್ಯಗಳನ್ನು, ಅವು ಮೇಲೆ ಹೇಳಿದ ಅಧಿಕಾರಗಳಿಗೆ ಪ್ರಾಸಂಗಿಕವಾಗಿರಲಿ ಅಥವಾ ಇಲ್ಲದಿರಲಿ, ಕೈಗೊಳ್ಳುವುದು;

(xvi) ಪರೀಕ್ಷೆಗಳ ಆಧಾರದ ಮೇಲೆ ಅಥವಾ ಸರ್ಕಾರದಿಂದ ಅನುಮೋದಿತವಾದ ಇತರ ಯಾವುದೇ ಮೌಲ್ಯಮಾಪನ ವಿಧಾನದ ಆಧಾರದ ಮೇಲೆ ನೀಡಲು ಪದವಿಗಳು, ಡಿಪ್ಲೋಮಾಗಳು, ಪ್ರಮಾಣಪತ್ರಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(xvii) ಫಿಲಂಗಳು, ಕ್ಯಾಸೆಟ್‌ಗಳು, ಧ್ವನಿಸುರುಳಿಗಳು, ದೃಶ್ಯಸುರುಳಿಗಳು, ಸಿ.ಡಿ., ವಿ.ಸಿ.ಡಿ. ಪೆನ್ ಡ್ರೈವ್‌ಗಳು ಮತ್ತು ಇತರ ತಂತ್ರಾಂಶಗಳೂ ಹಾಗೂ ಇತರ ಸಂಬಂಧಿತ ವಿದ್ಯುನ್ಮಾನ ಮತ್ತು ಮುದ್ರಣ ಮಾಧ್ಯಮ ಸೇರಿದಂತೆ ಬೋಧಕ ಸಾಮಗ್ರಿಗಳನ್ನು ತಯಾರಿಸುವುದಕ್ಕಾಗಿ ಅವಕಾಶ ಕಲ್ಪಿಸುವುದು;

(xviii) ಪ್ರಬಂಧಕ ಮಂಡಳಿಯ ಅನುಮೋದನೆಯೊಡನೆ ವಿಶ್ವವಿದ್ಯಾಲಯದ ಉದ್ದೇಶಗಳಿಗಾಗಿ ವಿಶ್ವವಿದ್ಯಾಲಯದ ಸ್ವತ್ತುಗಳನ್ನು ಭದ್ರತೆಯಾಗಿ ನೀಡಿ ಅಥವಾ ನೀಡದೆ ಹಣವನ್ನು ಪಡೆಯುವುದು, ಸಂಗ್ರಹಿಸುವುದು, ಚಂದಾದಾರರಾಗುವುದು ಮತ್ತು ಸಾಲ ಪಡೆಯುವುದು;

(xix) ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುದೇ ಇತರ ಶೈಕ್ಷಣಿಕ ಸಂಸ್ಥೆಗಳ ಆಡಳಿತವನ್ನು ವಶಪಡಿಸಿಕೊಳ್ಳುವುದು ಮತ್ತು ತೆಗೆದುಕೊಳ್ಳುವುದು ಹಾಗೂ ನಡೆಸುವುದು;

(xx) ವ್ಯವಸ್ಥಾಪನಾ ಮಂಡಳಿ ಪೂರ್ವಾನುಮೋದನೆಯೊಂದಿಗೆ ಸ್ವತ್ತುಗಳನ್ನು ಆರ್ಜಿಸುವುದು; ಮತ್ತು

(xxi) ವಿಶ್ವವಿದ್ಯಾಲಯದ ಮೇಲಿನ ಉದ್ದೇಶಗಳಿಗೆ ಸಂಬಂಧಿಸಿದ ಅಥವಾ ಪ್ರಾಸಂಗಿಕವಾದ ಯಾವುದೇ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು.

**9. ವಿಶ್ವವಿದ್ಯಾಲಯವು ಎಲ್ಲಾ ವರ್ಗಗಳು, ಜಾತಿಗಳು, ಮತ, ಲಿಂಗ ಅಥವಾ ರಾಷ್ಟ್ರದ ಎಲ್ಲರಿಗೂ ಮುಕ್ತವಾಗಿರತಕ್ಕದ್ದು.-** ವಿಶ್ವವಿದ್ಯಾಲಯದ ಪ್ರವೇಶಗಳು ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರದ ಎಲ್ಲಾ ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು. ಎಲ್ಲಾ ಪ್ರವೇಶಗಳನ್ನು ಅರ್ಹತಾ ಪರೀಕ್ಷೆಗಳಲ್ಲಿನ ಅರ್ಹತೆಯ ಆಧಾರದ ಮೇಲೆ ಮಾಡತಕ್ಕದ್ದು:

ಪರಂತು, ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳ ಪ್ರವೇಶದಲ್ಲಿ ಶೇಕಡಾ ನಲವತ್ತರಷ್ಟನ್ನು ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ಮೀಸಲಿಡತಕ್ಕದ್ದು ಮತ್ತು ಪ್ರವೇಶಗಳನ್ನು ಕೇಂದ್ರ ಸರ್ಕಾರವು ಅಥವಾ ರಾಜ್ಯ ಸರ್ಕಾರವು ಅಥವಾ ಸಂದರ್ಭಾನುಸಾರವಾಗಿ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡತಕ್ಕದ್ದು ಮತ್ತು ಸೀಟುಗಳನ್ನು ಅರ್ಹತೆ ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ರೂಪಿಸುವ ಮೀಸಲಾತಿ ನೀತಿಗೆ ಅನುಸಾರವಾಗಿ ಹಂಚಿಕೆ ಮಾಡತಕ್ಕದ್ದು:

ಮತ್ತು ಪರಂತು, ಯಾವುದೇ ಕೋರ್ಸಿನಲ್ಲಿ ಹತ್ತಕ್ಕಿಂತ ಕಡಿಮೆ ಸೀಟುಗಳು ಇರುವಲ್ಲಿ, ಸ್ನಾತಕೋತ್ತರ, ಪಿಹೆಚ್‌ಡಿ ಮತ್ತು ಸಂಶೋಧನೆ ಇಂಥ ಕೋರ್ಸುಗಳನ್ನು ಒಟ್ಟಿಗೆ ಒಂದುಗೂಡಿಸುವ ಮೂಲಕ ಮೀಸಲಿಡತಕ್ಕದ್ದು ಮತ್ತು ಯಾವುದೇ ಕೋರ್ಸಿನಲ್ಲಿ ಮೂರು ಸೀಟುಗಳಿಗಿಂತ ಕಡಿಮೆ ಇರುವಲ್ಲಿ, ಅವುಗಳನ್ನು ಸರದಿ ಸುತ್ತಿನಲ್ಲಿ ಮೀಸಲಿಡತಕ್ಕದ್ದು.

**10. ರಾಷ್ಟ್ರೀಯ ಅಧಿಮಾನ್ಯತೆ.-** ವಿಶ್ವವಿದ್ಯಾಲಯವು ಪ್ರಾರಂಭವಾದ ತರುವಾಯ ಆದಷ್ಟು ಬೇಗನೆ ಸಂಬಂಧಪಟ್ಟ ಶಾಸನಾತ್ಮಕ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳಿಂದ ಅಧಿಮಾನ್ಯತೆಯನ್ನು ಕೋರತಕ್ಕದ್ದು ಮತ್ತು ಈ ವಿಶ್ವವಿದ್ಯಾಲಯಗಳು ನಡೆಸುವ ಎಲ್ಲಾ ವ್ಯಾಸಂಗ ಕ್ರಮಗಳು ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ವಿನಿಯಮಗಳಿಗೆ ಅನುಸಾರವಾಗಿ ಇರತಕ್ಕದ್ದು.

**11. ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು.-** ಪ್ರಾಯೋಜಕ ಸಂಸ್ಥೆಯು ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದಂತೆ ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಇವುಗಳಲ್ಲಿ ಪ್ರತಿಯೊಂದನ್ನು ಪ್ರಾಯೋಜಕ ಸಂಸ್ಥೆಯು ತನ್ನ ವಿವೇಚನಾನುಸಾರ ಚಲಾಯಿಸಬಹುದು, ಎಂದರೆ:-

(i) ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಪುನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(ii) ವಿಶ್ವವಿದ್ಯಾಲಯದ ಪ್ರಥಮ ಪ್ರಬಂಧಕ ಮಂಡಳಿಯನ್ನು ರಚಿಸುವುದು;

(iii) ಪ್ರಬಂಧಕ ಮಂಡಳಿಯ ಪ್ರಥಮ ಅಧ್ಯಕ್ಷರನ್ನು ನಾಮನಿರ್ದೇಶಿಸುವುದು;

(iv) ಪ್ರಬಂಧಕ ಮಂಡಳಿಯ ಸದಸ್ಯರಾಗಿ ಮೂರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(v) ವ್ಯವಸ್ಥಾಪನಾ ಮಂಡಳಿ ಸದಸ್ಯರಾಗಿ ಇಬ್ಬರು ವ್ಯಕ್ತಿಗಳನ್ನು ನಾಮ ನಿರ್ದೇಶಿಸುವುದು;

(vi) ವಿಶ್ವವಿದ್ಯಾಲಯದ ದತ್ತಿ ನಿಧಿಗೆ ದೇಣಿಗೆ ನೀಡಲು ನಿಧಿ ಮೂಲಗಳನ್ನು ನಿರ್ಧರಿಸುವುದು;

(vii) ವಿಶ್ವವಿದ್ಯಾಲಯದ ಹಣದ ವಿನಿಯೋಗ ಮತ್ತು ವೆಚ್ಚ ಮಾಡುವುದನ್ನು ನಿರ್ಧರಿಸುವುದು; ಮತ್ತು

(viii) ಈ ಅಧಿನಿಯಮದಲ್ಲಿ ಉಪಬಂಧಿಸಿರುವ ವಿಧಾನದಲ್ಲಿ ಪ್ರಬಂಧಕ ಮಂಡಳಿಯ ಸಭೆಯಲ್ಲಿಯ ಯಾವುದೇ ವಿವಾದಗಳನ್ನು ಬಗೆಹರಿಸುವುದು.

## ಅಧ್ಯಾಯ - III
## ವಿಶ್ವವಿದ್ಯಾಲಯದ ಅಧಿಕಾರಿಗಳು

**12. ವಿಶ್ವವಿದ್ಯಾಲಯದ ಅಧಿಕಾರಿಗಳು.-** ಈ ಮುಂದಿನವರು ವಿಶ್ವವಿದ್ಯಾಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:-

(i) ಸಂದರ್ಶಕರು;

(ii) ಸಹ-ಸಂದರ್ಶಕರು;

(iii) ಕುಲಾಧಿಪತಿಗಳು;

(iv) ಸಹ-ಕುಲಾಧಿಪತಿಗಳು;

(v) ಕುಲಪತಿಗಳು;

(vi) ಸಹಕುಲಪತಿಗಳು;

(vii) ವ್ಯಾಸಂಗ ವಿಭಾಗದ ಡೀನ್‌ಗಳು;

(viii) ಕುಲಸಚಿವರು;

(ix) ಹಣಕಾಸು ಅಧಿಕಾರಿ; ಮತ್ತು

(x) ಪರಿನಿಯಮಗಳ ಮೂಲಕ ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಘೋಷಿಸಬಹುದಾದಂಥ ಇತರ ಅಧಿಕಾರಿಗಳು.

**13. ಸಂದರ್ಶಕರು.-** (1) ಕರ್ನಾಟಕದ ಘನತೆವೆತ್ತ ರಾಜ್ಯಪಾಲರು ವಿಶ್ವವಿದ್ಯಾಲಯದ ಸಂದರ್ಶಕರಾಗಿರತಕ್ಕದ್ದು ಮತ್ತು ಸಂದರ್ಶಕರು ವಿಶ್ವವಿದ್ಯಾಲಯದ ಕಾರ್ಯನಿರ್ವಹಣೆಯ ಸುಧಾರಣೆಗಾಗಿ ಸಲಹೆಗಳನ್ನು ನೀಡಬಹುದು.

(2) ಸಂದರ್ಶಕರು, ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಸಂದರ್ಶಕರು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ವ್ಯವಹಾರಗಳಿಗೆ ಸಂಬಂಧಿಸಿದಂತೆ, ಯಾವುದೇ ಪತ್ರ ಅಥವಾ ಮಾಹಿತಿಯನ್ನು ತರಿಸಿಕೊಳ್ಳುವುದು; ಮತ್ತು

(ii) ಸಂದರ್ಶಕರು, ಅವರು ಸ್ವೀಕರಿಸಿದ ಮಾಹಿತಿಯ ಆಧಾರದ ಮೇಲೆ ವಿಶ್ವವಿದ್ಯಾಲಯಗಳ ಯಾವುದೇ ಪ್ರಾಧಿಕಾರವು ಮಾಡಿದ ಯಾವುದೇ ಆದೇಶ, ನಡೆಸಿದ ವ್ಯವಹರಣೆಗಳು ಅಥವಾ ಕೈಗೊಂಡ ತೀರ್ಮಾನಗಳು, ಈ ಅಧಿನಿಯಮ, ವಿನಿಯಮಗಳು ಅಥವಾ ನಿಯಮಗಳಿಗೆ ಪೂರಕವಾಗಿಲ್ಲವೆಂದು ಮನಗಂಡರೆ ಅವರು ವಿಶ್ವವಿದ್ಯಾಲಯದ ಹಿತಾಸಕ್ತಿಯಿಂದ ತಾವು ಸೂಕ್ತವೆಂದು ಭಾವಿಸಬಹುದಾದಂಥ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಹಾಗೆ ಹೊರಡಿಸಿದ ನಿರ್ದೇಶನಗಳನ್ನು ಸಂಬಂಧಪಟ್ಟವರೆಲ್ಲರೂ ಪಾಲಿಸತಕ್ಕದ್ದು.

**14. ಸಹ-ಸಂದರ್ಶಕರು.-** (1) ಕರ್ನಾಟಕ ಸರ್ಕಾರದ ಮಾನ್ಯ ಉನ್ನತ ಶಿಕ್ಷಣ ಮಂತ್ರಿಗಳು ವಿಶ್ವವಿದ್ಯಾಲಯದ ಸಹ-ಸಂದರ್ಶಕರಾಗಿರತಕ್ಕದ್ದು.

(2) ಸಂದರ್ಶಕರ ಅನುಪಸ್ಥಿತಿಯಲ್ಲಿ ಸಹ-ಸಂದರ್ಶಕರು ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**15. ಕುಲಾಧಿಪತಿಗಳು.-** (1) ಕುಲಾಧಿಪತಿಯವರನ್ನು ಪ್ರಾಯೋಜಕ ಸಂಸ್ಥೆಯು ನೇಮಿಸತಕ್ಕದ್ದು.

(2) ಪ್ರಾಯೋಜಕ ಸಂಸ್ಥೆಯ ನಾಮನಿರ್ದೇಶಿತನು ಮೊದಲನೇ ಕುಲಾಧಿಪತಿಗಳಾಗಿರತಕ್ಕದ್ದು, ಅವರು ತಮ್ಮ ಜೀವನಪರ್ಯಂತ ಅಥವಾ ಅವರು ತಮ್ಮ ಪದವನ್ನು ಬಿಟ್ಟುಕೊಡುವವರೆಗೆ ಕುಲಾಧಿಪತಿಗಳಾಗಿ ಪದಧಾರಣ ಮಾಡಿರತಕ್ಕದ್ದು.

(3) ತದನಂತರದ ಕುಲಾಧಿಪತಿಗಳು, ಪ್ರಾಯೋಜಕ ಸಂಸ್ಥೆಯ ವ್ಯವಸ್ಥಾಪನಾ ಸಮಿತಿಯ ಸದಸ್ಯರಾಗಿರತಕ್ಕದ್ದು.

(4) ಪ್ರಾಯೋಜಕ ಸಂಸ್ಥೆಯು ಸಹ-ಕುಲಾಧಿಪತಿಯನ್ನು ನೇಮಿಸಬಹುದು.

(5) ಹಾಗೆ ನೇಮಕಗೊಂಡ ತದನಂತರದ ಕುಲಾಧಿಪತಿಗಳು ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ಪದಧಾರಣ ಮಾಡತಕ್ಕದ್ದು.

(6) ಕುಲಾಧಿಪತಿಗಳು ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳ ಅಡಿಯಲ್ಲಿ ಅವರಿಗೆ ಪ್ರದಾನ ಮಾಡಬಹುದಾದಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು, ಅವುಗಳಲ್ಲಿ ಈ ಮುಂದಿನ ಅಧಿಕಾರಗಳು ಒಳಗೊಂಡಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುವುದು;

(ii) ಸಂದರ್ಶಕರ ಮತ್ತು ಸಹ-ಸಂದರ್ಶಕರಿಬ್ಬರ ಗೈರುಹಾಜರಿಯಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಘಟಿಕೋತ್ಸವಗಳಲ್ಲಿ ಅಧ್ಯಕ್ಷತೆಯನ್ನು ವಹಿಸುವುದು;

(iii) ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವುದು;

(iv) ಈ ಅಧಿನಿಯಮ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಅನುಸಾರವಾಗಿ ಸಹ-ಕುಲಾಧಿಪತಿಗಳು, ಕುಲಪತಿಗಳನ್ನು ನೇಮಿಸುವುದು ಅಥವಾ ಪುನರ್ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(v) ಸಹಕುಲಪತಿಗಳು, ಡೀನ್, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿಗಳ ನೇಮಕಾತಿಯನ್ನು ಪೂರ್ವಾನುಮೋದಿಸುವುದು;

(vi) ಮೊದಲ ಸಹಕುಲಪತಿಗಳನ್ನು ಹಾಗೂ ಹಣಕಾಸು ಅಧಿಕಾರಿಯನ್ನು ನೇಮಿಸುವುದು;

(vii) ಮೊದಲ ವ್ಯವಸ್ಥಾಪನಾ ಮಂಡಳಿ, ಹಣಕಾಸು ಸಮಿತಿ, ಸಂಶೋಧನಾ ಪರಿಷತ್ತು ಹಾಗೂ ಶೈಕ್ಷಣಿಕ ಪರಿಷತ್ತುಗಳನ್ನು ರಚಿಸುವುದು;

(viii) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ ಕಾರ್ಯಸೂಚಿ ವಿಷಯಗಳನ್ನು ಪೂರ್ವಾನುಮೋದಿಸುವುದು; ಮತ್ತು

(ix) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ (ಪ್ರಬಂಧಕ ಮಂಡಳಿಯ ಸಭೆಯಲ್ಲಿ ಉಂಟಾದ ವಿವಾದಗಳನ್ನು ಹೊರತುಪಡಿಸಿ) ವಿವಾದಗಳನ್ನು ಪರಿಹರಿಸುವುದು.

(7) ಪದಾಧಿಕಾರಿ ಅಥವಾ ಸಂಸ್ಥೆ ಮತ್ತು ವಿಶ್ವವಿದ್ಯಾಲಯದ ಯಾವುದೇ ಇತರ ಪದಾಧಿಕಾರಿ ಅಥವಾ ಸಂಸ್ಥೆಯ ನಡುವೆ ವಿವಾದಗಳು ಉಂಟಾದಲ್ಲಿ, ಆ ವಿವಾದವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿವಾದದ ಸಂಬಂಧದಲ್ಲಿ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**16. ಸಹ-ಕುಲಾಧಿಪತಿಗಳು.-** (1) ಪರಿನಿಯಮಗಳಲ್ಲಿ ಹೇಳಬಹುದಾದ ಅಂಥ ಇತರ ನಿಬಂಧನೆಗಳು ಮತ್ತು ಷರತ್ತುಗಳಿಗೆ ಒಳಪಟ್ಟು ಪ್ರಾಯೋಜಕ ಸಂಸ್ಥೆಯು ನಿಯಮಿಸಿದ ಅವಧಿಗಾಗಿ, ಪ್ರಾಯೋಜಕ ಸಂಸ್ಥೆಯು ಸಹ-ಕುಲಾಧಿಪತಿಗಳನ್ನು ನೇಮಕ ಮಾಡತಕ್ಕದ್ದು.

(2) ಸಹ-ಕುಲಾಧಿಪತಿಯು, ಕುಲಾಧಿಪತಿಯ ಗೈರುಹಾಜರಿಯಲ್ಲಿ ಆತನ ಎಲ್ಲಾ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಕುಲಾಧಿಪತಿಯ ಲಿಖಿತ ಅನುಮೋದನೆಯೊಂದಿಗೆ ಆತನಿಗೆ ಯಾವುದೇ ಹೆಚ್ಚುವರಿ ಕರ್ತವ್ಯಗಳನ್ನು ವಹಿಸತಕ್ಕದ್ದು.

(3) ಸಹ-ಕುಲಾಧಿಪತಿಯು, ಕುಲಾಧಿಪತಿಯ ಗೈರು ಹಾಜರಿಯಲ್ಲಿ ಎಲ್ಲಾ ಸಮಿತಿಗಳು, ಸಭೆಗಳು ಮತ್ತು ಘಟಿಕೋತ್ಸವದ ಅಧ್ಯಕ್ಷತೆ ವಹಿಸತಕ್ಕದ್ದು.

**17. ಕುಲಪತಿಗಳು.-** (1) (2)ನೇ ಉಪಪ್ರಕರಣದ ಉಪಬಂಧಗಳಿಗೆ ಅನುಸಾರವಾಗಿ ನಾಮನಿರ್ದೇಶಕ ಸಮಿತಿಯು ಶಿಫಾರಸ್ಸು ಮಾಡಿದ ಮೂರು ವ್ಯಕ್ತಿಗಳ ಪೈಕಿಯಿಂದ ಒಬ್ಬರನ್ನು ಮೂರು ವರ್ಷಗಳ ಅವಧಿಗಾಗಿ ಕುಲಪತಿಗಳನ್ನಾಗಿ, ಪರಿನಿಯಮಗಳಲ್ಲಿ ನಿಯಮಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರು ನೇಮಿಸತಕ್ಕದ್ದು. ಮೂರು ವರ್ಷಗಳ ಅವಧಿಯು ಮುಗಿದ ತರುವಾಯ, ಇದನ್ನು ಮೂರು ವರ್ಷಗಳ ಮತ್ತೊಂದು ಅವಧಿಗೆ ನವೀಕರಿಸಬಹುದು:

ಪರಂತು, ಕುಲಪತಿಯವರು, ತಮ್ಮ ಅವಧಿ ಮುಗಿದ ನಂತರವೂ ಹೊಸ ಕುಲಪತಿಯವರು ಸೇರಿಕೊಳ್ಳುವವರೆಗೆ ಪದದಲ್ಲಿ ಮುಂದುವರೆಯತಕ್ಕದ್ದು. ಆದಾಗ್ಯೂ ಈ ಅವಧಿಯು ಯಾವುದೇ ಸಂದರ್ಭದಲ್ಲಿ ಒಂದು ವರ್ಷವನ್ನು ಮೀರತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಹೇಳಿರುವ ನಾಮನಿರ್ದೇಶಕ ಸಮಿತಿಯಲ್ಲಿ ಈ ಮುಂದಿನ ವ್ಯಕ್ತಿಗಳು ಇರತಕ್ಕದ್ದು, ಎಂದರೆ:-

(i) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಒಬ್ಬ ವ್ಯಕ್ತಿ;

(ii) ಪ್ರಬಂಧಕ ಮಂಡಳಿಯ ಇಬ್ಬರು ನಾಮ ನಿರ್ದೇಶಿತರು, ಇವರಲ್ಲಿ ಒಬ್ಬರನ್ನು ಪ್ರಬಂಧಕ ಮಂಡಳಿಯು ಸಮಿತಿಯ ಸಂಚಾಲಕರೆಂದು ನಾಮನಿರ್ದೇಶಿಸತಕ್ಕದ್ದು.

(3) ನಾಮನಿರ್ದೇಶನ ಸಮಿತಿಯು, ಅರ್ಹತೆಯ ಆಧಾರದ ಮೇಲೆ ಕುಲಪತಿಯ ಹುದ್ದೆಗೆ ಸೂಕ್ತವಾದ ಮೂರು ವ್ಯಕ್ತಿಗಳ ಹೆಸರನ್ನು ಶಿಫಾರಸ್ಸು ಮಾಡತಕ್ಕದ್ದು ಮತ್ತು ಅದನ್ನು ಪ್ರತಿಯೊಬ್ಬ ವ್ಯಕ್ತಿಯ ವಿದ್ಯಾರ್ಹತೆ ಮತ್ತಿತರ ವಿಶಿಷ್ಟ ಪ್ರಶಸ್ತಿಗಳನ್ನು ತಿಳಿಸುವ ಒಂದು ಸಂಕ್ಷಿಪ್ತ ವರದಿಯೊಂದಿಗೆ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು.

(4) ಕುಲಪತಿಯವರು ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಾಹಕ ಮತ್ತು ಶೈಕ್ಷಣಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣವನ್ನು ಚಲಾಯಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯದ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೊಳಿಸತಕ್ಕದ್ದು:

ಪರಂತು, ಶಿಕ್ಷಕರ ನೇಮಕಾತಿಯನ್ನು ಹೊರತುಪಡಿಸಿ ಕೂಡಲೇ ಕ್ರಮವನ್ನು ಕೈಗೊಳ್ಳಬೇಕಾದ ತುರ್ತು ಸ್ವರೂಪದ ಯಾವುದೇ ಇತರ ವಿಷಯಗಳಲ್ಲಿ ಮತ್ತು ಅದನ್ನು ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ವಿಶ್ವವಿದ್ಯಾಲಯವು ಇದಕ್ಕಾಗಿ ಅಧಿಕೃತಗೊಳಿಸಿದ್ದ ಯಾವೊಬ್ಬ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ಇತರ ಸಂಸ್ಥೆಯು ಕೂಡಲೇ ಕ್ರಮಕೈಗೊಳ್ಳುವುದು ಸಾಧ್ಯವಿರದಿರುವಾಗ ಕುಲಪತಿಯವರು ತಾನು ಸೂಕ್ತವೆಂದು ಭಾವಿಸಬಹುದಾದಂಥ ಕ್ರಮವನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆದು ಕೈಗೊಳ್ಳತಕ್ಕದ್ದು.

(5) ಕುಲಪತಿಯವರು ಪರಿನಿಯಮಗಳು ಅಥವಾ ನಿಯಮಗಳಲ್ಲಿ ಹೇಳಲಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು:

ಪರಂತು, ಕುಲಪತಿಗಳ ಅಭಿಪ್ರಾಯದಲ್ಲಿ, ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಯಾವುದೇ ನಿರ್ಣಯವು, ಈ ಅಧಿನಿಯಮ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳು, ವಿನಿಯಮಗಳು ಅಥವಾ ನಿಯಮಗಳ ಮೂಲಕ ಪ್ರದತ್ತವಾದ ಅಧಿಕಾರದ ಹೊರಗಿದ್ದರೆ ಅಥವಾ ವಿಶ್ವವಿದ್ಯಾಲಯದ ಹಿತಾಸಕ್ತಿಗೆ ಪ್ರತಿಕೂಲವಾಗಬಹುದಾಗಿದ್ದರೆ, ಆದರ ನಿರ್ಣಯದ ದಿನಾಂಕದಿಂದ ಹದಿನೈದು ದಿನಗಳ ಒಳಗೆ ತನ್ನ ನಿರ್ಣಯವನ್ನು ಪರಿಷ್ಕರಿಸಲು ಸಂಬಂಧಪಟ್ಟ ಪ್ರಾಧಿಕಾರವನ್ನು ಆತನು ಕೋರತಕ್ಕದ್ದು ಮತ್ತು ಪ್ರಾಧಿಕಾರವು ಅಂಥ ನಿರ್ಣಯವನ್ನು ಸಂಪೂರ್ಣವಾಗಿ ಅಥವಾ

ಭಾಗಶ:ವಾಗಿ ಪರಿಷ್ಕರಿಸಲು ನಿರಾಕರಿಸಿದ ಸಂದರ್ಭದಲ್ಲಿ ಅಥವಾ ಹದಿನೈದು ದಿನಗಳೊಳಗೆ ಯಾವುದೇ ನಿರ್ಣಯವನ್ನು ತೆಗೆದುಕೊಳ್ಳಲು ವಿಫಲವಾದಲ್ಲಿ, ನಂತರ ಅಂಥ ವಿಷಯವನ್ನು ಕುಲಾಧಿಪತಿಗಳಿಗೆ ಕಳುಹಿಸತಕ್ಕದ್ದು ಮತ್ತು ಈ ಬಗ್ಗೆ ಇವರ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

(6) ಕುಲಪತಿಯವರ ಸೇವೆಗಳನ್ನು, ಪ್ರಬಂಧಕ ಮಂಡಳಿಯ ಅನುಮೋದನೆಯೊಂದಿಗೆ ಮತ್ತು ಸಹಜ ನ್ಯಾಯದ ತತ್ವಗಳನ್ನು ಅನುಸರಿಸಿದ ನಂತರ ಹಾಗೂ ಶಿಸ್ತಿನ ಆಧಾರದ ಮೇಲೆ ಅಂತ್ಯಗೊಳಿಸುವ ಸಂದರ್ಭವೂ ಸೇರಿದಂತೆ, ಪ್ರಕರಣದ ಬಗ್ಗೆ ಕುಲಪತಿಯು ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡಿದ ತರುವಾಯ, ಕುಲಾಧಿಪತಿಯವರು ಅಂತ್ಯಗೊಳಿಸಬಹುದು.

(7) ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಸಂದರ್ಶಕರು, ಸಹ-ಸಂದರ್ಶಕರು, ಕುಲಾಧಿಪತಿಯವರು ಮತ್ತು ಸಹ-ಕುಲಾಧಿಪತಿಯವರು ಇವರುಗಳ ಗೈರು ಹಾಜರಿಯ ಸಂದರ್ಭದಲ್ಲಿ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**18. ಸಹಕುಲಪತಿಗಳು.-** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಮೂರು ಜನರನ್ನು ಮೀರದಂತೆ ಸಹಕುಲಪತಿಗಳನ್ನು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**19. ವ್ಯಾಸಂಗ ವಿಭಾಗಗಳ ಡೀನ್‌ಗಳು.-** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಪರಿನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವ್ಯಾಸಂಗ ವಿಭಾಗಗಳ ಡೀನ್‌ಗಳನ್ನು ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**20. ಕುಲಸಚಿವರು.-** (1) ಕುಲಾಧಿಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಸಚಿವರನ್ನು ನೇಮಕ ಮಾಡತಕ್ಕದ್ದು.

(2) ಪರಿನಿಯಮಗಳಲ್ಲಿ ಪರಿಭಾಷಿಸಿರುವಂಥ ಎಲ್ಲಾ ಕರಾರುಗಳನ್ನು ವಿಶ್ವವಿದ್ಯಾಲಯದ ಪರವಾಗಿ ಕುಲಸಚಿವರು ಮಾಡಿಕೊಳ್ಳತಕ್ಕದ್ದು ಮತ್ತು ಅದಕ್ಕೆ ಸಹಿ ಹಾಕತಕ್ಕದ್ದು.

(3) ಕುಲಸಚಿವರು ವಿಶ್ವವಿದ್ಯಾಲಯದ ಪರವಾಗಿ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಪರಿನಿಯಮಗಳಿಂದ ಪ್ರದತ್ತಗೊಳಿಸಬಹುದಾದಂಥ ಅಥವಾ ಕುಲಾಧಿಪತಿಯವರು, ಅಥವಾ ಕುಲಪತಿಯವರು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು ವಿಶ್ವವಿದ್ಯಾಲಯದ ದಾಖಲೆಗಳು ಮತ್ತು ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು, ಕುಲಪತಿಯವರು ಅಥವಾ ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಅಂಥ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿತಕ್ಕದ್ದು.

**21. ಹಣಕಾಸು ಅಧಿಕಾರಿ.-** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಹಣಕಾಸು ಅಧಿಕಾರಿಯನ್ನು ನೇಮಕ ಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**22. ಇತರ ಅಧಿಕಾರಿಗಳು.-** ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ ನೇಮಕಾತಿಯ ವಿಧಾನ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಕರ್ತವ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ - IV

## ವಿಶ್ವವಿದ್ಯಾಲಯದ ಪ್ರಾಧಿಕಾರಗಳು

**23. ವಿಶ್ವವಿದ್ಯಾಲಯದ ಪ್ರಾಧಿಕಾರಗಳು.-** ಈ ಮುಂದಿನವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:-

(i) ಪ್ರಬಂಧಕ ಮಂಡಳಿ;

(ii) ವ್ಯವಸ್ಥಾಪನಾ ಮಂಡಳಿ;

(iii) ಶೈಕ್ಷಣಿಕ ಪರಿಷತ್ತು;

(iv) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು;

(v) ಹಣಕಾಸು ಸಮಿತಿ; ಮತ್ತು

(vi) ವಿಶ್ವವಿದ್ಯಾಲಯದ ಪ್ರಾಧಿಕಾರಗಳೆಂದು ಪರಿನಿಯಮಗಳ ಮೂಲಕ ಘೋಷಿಸಬಹುದಾದ ಅಂಥ ಇತರ ಪ್ರಾಧಿಕಾರಗಳು.

**24. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು.-**(1) ಪ್ರಬಂಧಕ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಾಧಿಪತಿಯವರು - ಅಧ್ಯಕ್ಷರು;

(ii) ಸಹ-ಕುಲಾಧಿಪತಿಯವರು - ಸದಸ್ಯರು;

(iii) ಕುಲಪತಿಯವರು - ಸದಸ್ಯರು;

(iv) ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಅಥವಾ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ - ಪದನಿಮಿತ್ತ ಸದಸ್ಯರು;

(v) ರಾಜ್ಯ ಸರ್ಕಾರವು ನಾಮ ನಿರ್ದೇಶನ ಮಾಡಿದ ಆಡಳಿತವನ್ನು ಒಳಗೊಂಡಂತೆ ವ್ಯವಸ್ಥಾಪನೆ, ಹಣಕಾಸು ಅಥವಾ ಯಾವುದೇ ಇತರ ವಿಶೇಷ ಕ್ಷೇತ್ರದಲ್ಲಿನ ಒಬ್ಬರು ತಜ್ಞರು - ಸದಸ್ಯರು;

(vi) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಮೂವರು ವ್ಯಕ್ತಿಗಳು ಅವರ ಪೈಕಿ ಒಬ್ಬರು ಮಹಿಳೆಯಾಗಿರತಕ್ಕದ್ದು - ಸದಸ್ಯರು;

(vii) ಸಹ ಕುಲಪತಿಯವರು ಮತದಾನದ ಹಕ್ಕಿಲ್ಲದ ಸದಸ್ಯರಾಗಿರತಕ್ಕದ್ದು; ಮತ್ತು

(viii) ವಿಶ್ವವಿದ್ಯಾಲಯ ಅನುದಾನ ಆಯೋಗದ ನಾಮನಿರ್ದೇಶಿತ ಒಬ್ಬ ಸುಪ್ರಸಿದ್ಧ ಶಿಕ್ಷಣ ತಜ್ಞರು - ಸದಸ್ಯರು.

(2) ಕುಲಸಚಿವರು ಪ್ರಬಂಧಕ ಮಂಡಳಿಯ ಮತದಾನದ ಹಕ್ಕಿರದ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ಪ್ರಬಂಧಕ ಮಂಡಳಿಯ ಸದಸ್ಯರ ಪದಾವಧಿ, ಸರ್ಕಾರದಿಂದ ನಾಮನಿರ್ದೇಶಿತರಾದ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ನೇಮಕಾತಿ, ನವೀಕರಣ ಮತ್ತು ತೆಗೆದುಹಾಕುವುದು ಮುಂತಾದವುಗಳು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಾಧಿಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರ ಗೈರುಹಾಜರಿಯಲ್ಲಿ ಕುಲಾಧಿಪತಿಯವರಿಂದ ನಾಮನಿರ್ದೇಶಿತರಾದ ಯಾರಾದರೂ ಒಬ್ಬರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು. ಅಂಥ ಸಭೆಯ ಅಧ್ಯಕ್ಷತೆಯನ್ನು ವಹಿಸುವುದಕ್ಕೆ ಕುಲಾಧಿಪತಿಯವರು ಯಾವೊಬ್ಬ ವ್ಯಕ್ತಿಯನ್ನೂ ನಾಮನಿರ್ದೇಶನ ಮಾಡಿರದಿದ್ದಲ್ಲಿ, ಸಭೆಯಲ್ಲಿ ಹಾಜರಿರುವ ಸದಸ್ಯರು ಸರಳ ಬಹುಮತದ ಮೂಲಕ ಅವರುಗಳ ಪೈಕಿಯಿಂದಲೇ ಆ ಸಭೆಗೆ ಮಾತ್ರವೇ ಅಧ್ಯಕ್ಷನನ್ನು ಚುನಾಯಿಸತಕ್ಕದ್ದು.

(5) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಿಗೆ, ಅಂಥ ಸಭೆಯಲ್ಲಿ ಹಾಜರಾಗುವ ಮತ್ತು ಮತದಾನ ನೀಡುವ ಮೂರು ಜನ ಸದಸ್ಯರು ಕೋರಂ ಆಗಿರತಕ್ಕದ್ದು:

ಪರಂತು, ಪ್ರಬಂಧಕ ಮಂಡಳಿಯ ಯಾವುದೇ ಸಭೆಯ ಕೋರಂ ಪೂರ್ಣವಾಗಬೇಕಾದರೆ ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಿರುವುದು ಮತ್ತು ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ನಾಮನಿರ್ದೇಶಿತರು ಹಾಜರಾಗದೇ ಇದ್ದಾಗ ಕುಲಪತಿಯವರು ಹಾಜರಿರುವುದು ಯಾವಾಗಲೂ ಅವಶ್ಯವಾಗಿರತಕ್ಕದ್ದು.

(6) ಪ್ರಬಂಧಕ ಮಂಡಳಿಯು ವಿಶ್ವವಿದ್ಯಾಲಯದ ಪ್ರಧಾನ ಪ್ರಬಂಧಕ ಸಂಸ್ಥೆಯಾಗಿರತಕ್ಕದ್ದು ಮತ್ತು ಅದು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಕಗೊಳಿಸುವುದು;

(ii) ವಿಶ್ವವಿದ್ಯಾಲಯವು ಅನುಸರಿಸಬೇಕಾದ ಕಾರ್ಯನೀತಿಗಳನ್ನು ರಚಿಸುವುದು;

(iii) ಈ ಅಧಿನಿಯಮದ ಅಥವಾ ಪರಿನಿಯಮಗಳ ಅಥವಾ ನಿಯಮಗಳ ಉಪಬಂಧಗಳಿಗೆ ಅನುಗುಣವಾಗಿ ಇರದ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ತೀರ್ಮಾನಗಳನ್ನು ಪುನರೀಕ್ಷಿಸುವುದು;

(iv) ವಿಶ್ವವಿದ್ಯಾಲಯದ ಆಯವ್ಯಯ ಮತ್ತು ವಾರ್ಷಿಕ ವರದಿಗಳನ್ನು ಅನುಮೋದಿಸುವುದು;

(v) ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸುವುದು ಅಥವಾ ಈಗಾಗಲೇ ಇರುವ ಪರಿನಿಯಮಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವುದು ಅಥವಾ ನಿರಸನಗೊಳಿಸುವುದು;

(vi) ವಿಶ್ವವಿದ್ಯಾಲಯವನ್ನು ಸ್ವಯಂಸಮಾಪನಗೊಳಿಸುವ ನಿರ್ಧಾರವನ್ನು ತೆಗೆದುಕೊಳ್ಳುವುದು;

(vii) ಸರ್ಕಾರಕ್ಕೆ ಸಲ್ಲಿಸುವ ಪ್ರಸ್ತಾವಗಳನ್ನು ಅನುಮೋದಿಸುವುದು;

(viii) ಶುಲ್ಕ ನಿಯಂತ್ರಣ ಸಮಿತಿಗೆ ಮೂವರು ಸದಸ್ಯರನ್ನು ನಾಮನಿರ್ದೇಶನ ಮಾಡುವುದು; ಮತ್ತು

(ix) ವಿಶ್ವವಿದ್ಯಾಲಯದ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕೆ ಅಪೇಕ್ಷಣೀಯವೆಂದು ಕಂಡುಬರುವಂಥ ತೀರ್ಮಾನಗಳನ್ನು ಮತ್ತು ಕ್ರಮಗಳನ್ನು ಕೈಗೊಳ್ಳುವುದು.

(7) ಪ್ರಬಂಧಕ ಮಂಡಳಿಯು ಒಂದು ವರ್ಷದಲ್ಲಿ ಕನಿಷ್ಠ ಮೂರು ಸಲ ಸಭೆ ಸೇರತಕ್ಕದ್ದು.

(8) ಪ್ರಬಂಧಕ ಮಂಡಳಿಯು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಸಮಯ ಮತ್ತು ಸ್ಥಳದಲ್ಲಿ ಸಭೆ ಸೇರತಕ್ಕದ್ದು.

**25. ವ್ಯವಸ್ಥಾಪನಾ ಮಂಡಳಿ.-** (1) ವ್ಯವಸ್ಥಾಪನಾ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಗಳು;

(ii) ಸಹಕುಲಪತಿಗಳು;

(iii) ಕುಲಸಚಿವರು;

(iv) ಪ್ರಾಯೋಜಕ ಸಂಸ್ಥೆಯ ಇಬ್ಬರು ನಾಮನಿರ್ದೇಶಿತರು;

(v) ಕುಲಪತಿಗಳು ನಾಮನಿರ್ದೇಶಿಸಬಹುದಾದ ಇಬ್ಬರು ಡೀನ್‌ಗಳು;

(2) ಕುಲಪತಿಯವರು ವ್ಯವಸ್ಥಾಪನಾ ಮಂಡಳಿಯ ಅಧ್ಯಕ್ಷರಾಗಿರತಕ್ಕದ್ದು ಮತ್ತು ಕುಲಸಚಿವರು ವ್ಯವಸ್ಥಾಪನಾ ಮಂಡಳಿಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ವ್ಯವಸ್ಥಾಪನಾ ಮಂಡಳಿಯು ವಿಶ್ವವಿದ್ಯಾಲಯದ ಕಾರ್ಯಕಾರಿ ಸಂಸ್ಥೆಯಾಗಿರತಕ್ಕದ್ದು. ವ್ಯವಸ್ಥಾಪನಾ ಮಂಡಳಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ವ್ಯವಸ್ಥಾಪನಾ ಮಂಡಳಿಯ ಎಲ್ಲಾ ಸಭೆಗಳಲ್ಲಿ ಯಾವಾಗಲೂ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು ಹಾಗೂ ಕುಲಪತಿಯವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೇ ಇದ್ದ ಸಂದರ್ಭದಲ್ಲಿ ಸಭೆಯಲ್ಲಿ ಹಾಜರಿರುವ ಸದಸ್ಯರು ಚುನಾಯಿಸಿದ ಯಾವುದೇ ಇತರ ಸದಸ್ಯರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ವ್ಯವಸ್ಥಾಪನಾ ಮಂಡಳಿಯ ಸಭೆಯಲ್ಲಿ ಯಾವುದೇ ವಿಷಯವನ್ನು ಕುರಿತು ವಿವಾದ ಉಂಟಾದಲ್ಲಿ ಸದರಿ ವಿಷಯವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯದ ಬಗ್ಗೆ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**26. ಶೈಕ್ಷಣಿಕ ಪರಿಷತ್ತು.**-(1) ಶೈಕ್ಷಣಿಕ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಯವರು - ಅಧ್ಯಕ್ಷರು

(ii) ಸಹಕುಲಪತಿಯವರು - ಸದಸ್ಯರು

(iii) ಕುಲಸಚಿವರು - ಕಾರ್ಯದರ್ಶಿಗಳು

(iv) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಶೈಕ್ಷಣಿಕ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಶೈಕ್ಷಣಿಕ ಸಂಸ್ಥೆಯಾಗಿರತಕ್ಕದ್ದು ಮತ್ತು ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಹಾಗೂ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಬಗ್ಗೆ ಸಾಮಾನ್ಯ (general) ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**27. ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು.**- (1) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಸಂಶೋಧನಾ ಮತ್ತು ಅನ್ವೇಷಣಾ ಸಮಿತಿಯಾಗಿರತಕ್ಕದ್ದು ಹಾಗೂ ಸಂಶೋಧನಾ ಕ್ಷೇತ್ರಗಳ ಆದ್ಯತೆಯೂ ಒಳಗೊಂಡಂತೆ, ವಿಶ್ವವಿದ್ಯಾಲಯವು ಕೈಗೊಳ್ಳಬೇಕಾದ ಸಂಶೋಧನೆಯ ಬಗ್ಗೆ ಒಂದು ವ್ಯಾಪಕವಾದ ಪರಿಪೂರ್ಣ ಭವಿಷ್ಯದ್ ದೃಷ್ಟಿಯನ್ನು ಒದಗಿಸತಕ್ಕದ್ದು. ಈ ಪರಿಷತ್ತು, ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಮತ್ತು ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಸಂಶೋಧನೆ ಮತ್ತು ಅನ್ವೇಷಣಾ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಪ್ರಧಾನ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಯವರು - ಅಧ್ಯಕ್ಷರು

(ii) ಸಹಕುಲಪತಿಯವರು - ಸದಸ್ಯರು

(iii) ಸಂಶೋಧನೆಯ ಡೀನ್ - ಕಾರ್ಯದರ್ಶಿ

(iv) ಅನ್ವೇಷಣಾ ವಿಭಾಗದ ಮುಖ್ಯಸ್ಥರು - ಸದಸ್ಯರು

(v) ಎಲ್ಲಾ ವ್ಯಾಸಂಗ ವಿಭಾಗಗಳ ಡೀನ್‌ಗಳು - ಸದಸ್ಯರು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

**28. ಹಣಕಾಸು ಸಮಿತಿ.**- (1) ಹಣಕಾಸು ಸಮಿತಿ ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

| | | |
|---|---|---|
| (i) | ಕುಲಾಧಿಪತಿಯವರು ಅಥವಾ ಅವರ ನಾಮನಿರ್ದೇಶಿತರು | - ಅಧ್ಯಕ್ಷರು |
| (ii) | ಸಹ-ಕುಲಾಧಿಪತಿಯವರು | - ಸದಸ್ಯರು |
| (iii) | ಕುಲಪತಿಯವರು | - ಸದಸ್ಯರು |
| (iv) | ಕುಲಸಚಿವರು | - ಸದಸ್ಯರು |
| (v) | ಹಣಕಾಸು ಅಧಿಕಾರಿ | - ಕಾರ್ಯದರ್ಶಿ |
| (vi) | ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು | - ಸದಸ್ಯರು |
| (vii) | ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು. | |

(2) ಹಣಕಾಸು ಸಮಿತಿಯು ಹಣಕಾಸಿನ ವಿಷಯಗಳನ್ನು ನೋಡಿಕೊಳ್ಳುವ ವಿಶ್ವವಿದ್ಯಾಲಯದ ಪ್ರಧಾನ ಹಣಕಾಸು ಸಂಸ್ಥೆಯಾಗಿರತಕ್ಕದ್ದು ಹಾಗೂ ಅದು ಈ ಅಧಿನಿಯಮ, ನಿಯಮಗಳು ಮತ್ತು ಪರಿನಿಯಮಗಳ ಉಪಬಂಧಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಹಣಕಾಸು ವಿಷಯಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**29. ಇತರ ಪ್ರಾಧಿಕಾರಗಳು.**- ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ರಚನೆ, ಅಧಿಕಾರಗಳು ಹಾಗೂ ಪ್ರಕಾರ್ಯಗಳು ಪರಿನಿಯಮಗಳಿಂದ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

**30. ಒಂದು ಪ್ರಾಧಿಕಾರದ ಅಥವಾ ಸಂಸ್ಥೆಯ ಸದಸ್ಯತ್ವಕ್ಕೆ ಅನರ್ಹತೆ.**- ವಿಶ್ವವಿದ್ಯಾಲಯದ ಸಂಸ್ಥೆಗಳ ಯಾವುವೇ ಪ್ರಾಧಿಕಾರಗಳ ಒಬ್ಬ ವ್ಯಕ್ತಿಯು,-

(ಎ) ಅಸ್ವಸ್ಥ ಚಿತ್ತನಾಗಿದ್ದು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿಸಲ್ಪಟ್ಟಿದ್ದರೆ;

(ಬಿ) ಅವಿಮುಕ್ತ ದಿವಾಳಿಯಾಗಿದ್ದರೆ;

(ಸಿ) ನೈತಿಕ ಅಧ:ಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ

ಎಂದು ನಿರ್ಣೀತನಾಗಿದ್ದರೆ;

(ಡಿ) ಖಾಸಗಿ ಬೋಧನಾ ತರಗತಿಗಳನ್ನು ನಡೆಸುತ್ತಿದ್ದರೆ ಅಥವಾ ಸ್ವತ: ನಿರತನಾಗಿದ್ದರೆ;

(ಇ) ಯಾವುದೇ ವಿಧದಲ್ಲಿ, ಎಲ್ಲಿಯೇ, ಯಾವುದೇ ಪರೀಕ್ಷೆಯನ್ನು ನಡೆಸುವಲ್ಲಿ ಅನುಚಿತ ಅಭ್ಯಾಸದಲ್ಲಿ ತೊಡಗಿದ್ದಕ್ಕಾಗಿ ಅಥವಾ ಉತ್ತೇಜಿಸಿದ್ದಕ್ಕಾಗಿ ದಂಡಿತನಾಗಿದ್ದರೆ; ಮತ್ತು

(ಎಫ್) ಪ್ರಾಯೋಜಕ ಸಂಸ್ಥೆಯು ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಯಾವೊಬ್ಬ ಸದಸ್ಯನನ್ನು ಆ ಪದವನ್ನು ಹೊಂದಿರುವುದಕ್ಕೆ ಅರ್ಹನಲ್ಲನೆಂದು ಲಿಖಿತದಲ್ಲಿ ಅಭಿಪ್ರಾಯ ನೀಡಿದಾಗಲೆಲ್ಲಾ,

-ಸದಸ್ಯನಾಗಿರುವುದಕ್ಕೆ ಅನರ್ಹನಾಗತಕ್ಕದ್ದು.

**31. ಖಾಲಿಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ.**- ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಕಾರ್ಯ ಅಥವಾ ವ್ಯವಹರಣೆಗಳು ಕೇವಲ ಅದರಲ್ಲಿ ಯಾವುದೇ ಖಾಲಿಸ್ಥಾನ ಇದೆ ಎಂಬ ಕಾರಣದಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣದಿಂದ ಮಾತ್ರವೇ ಅಸಿಂಧುವಾಗತಕ್ಕದ್ದಲ್ಲ.

**32. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು.**- (1) ಯಾವುವೇ ಕಾರ್ಯಸೂಚಿ ವಿಷಯಗಳನ್ನು ಕುಲಾಧಿಪತಿಯವರ ಪೂರ್ವಾನುಮೋದನೆಯನ್ನು ಪಡೆಯದೇ ಪ್ರಬಂಧಕ ಮಂಡಳಿಯ ಅಥವಾ ವ್ಯವಸ್ಥಾಪನಾ ಮಂಡಳಿಯ ಅಥವಾ ಯಾವುದೇ ಸಮಿತಿಯ ಸಭೆಗಳ ಕಾರ್ಯಸೂಚಿ ವಿಷಯಗಳಲ್ಲಿ ಸೇರಿಸತಕ್ಕದ್ದಲ್ಲ ಅಥವಾ ಚರ್ಚೆಗೆ ತೆಗೆದುಕೊಳ್ಳತಕ್ಕದ್ದಲ್ಲ ಮತ್ತು ತೀರ್ಮಾನಿಸತಕ್ಕದ್ದಲ್ಲ.

(2) ಈ ಅಧಿನಿಯಮದ ಯಾವುದೇ ಉಪಬಂಧಗಳನ್ನು ಪಾಲಿಸದೆ ಇರುವ ಸಂದರ್ಭದಲ್ಲಿ, ಕುಲಾಧಿಪತಿಯವರು ವಿಶ್ವವಿದ್ಯಾಲಯದ ಯಾವುದೇ ಪದಾಧಿಕಾರಿ ಅಥವಾ ಸಂಸ್ಥೆಯು ತೆಗೆದುಕೊಂಡ ಎಲ್ಲಾ ತೀರ್ಮಾನಗಳನ್ನು ವಿಪರ್ಯಯಗೊಳಿಸುವ ಮೂಲಕ ಪರಿಹಾರ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಅಧಿಕಾರವನ್ನು ಎಲ್ಲಾ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಅಂಥ ಪರಿಹಾರ ಕ್ರಮದ ಪರಿಣಾಮವಾಗಿ ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ವಿಶ್ವವಿದ್ಯಾಲಯದ ಪದಾಧಿಕಾರಿ ಅಥವಾ ಸಂಸ್ಥೆಯು ಕೈಗೊಂಡಿದ್ದ ಎಲ್ಲಾ ಅಂಥ ಕ್ರಮಗಳು, ಮೊದಲಿನಿಂದಲೂ ಶೂನ್ಯ ಮತ್ತು ಅಕೃತ ಎಂದು ಭಾವಿಸತಕ್ಕದ್ದು ಹಾಗೂ ತತ್ಪರಿಣಾಮವಾಗಿ, ಉಪಬಂಧ ಪಾಲಿಸದೇ ಇದ್ದ ವಿಷಯ ಅಥವಾ ನಿರ್ಧಾರದ ಸಂಬಂಧದಲ್ಲಿ ಅದಕ್ಕೆ ಮುಂಚೆ ಇದ್ದ ವಸ್ತುಸ್ಥಿತಿಯೇ ಮುಂದುವರಿಯತಕ್ಕದ್ದು.

## ಅಧ್ಯಾಯ - V
## ಪರಿನಿಯಮಗಳು ಮತ್ತು ವಿನಿಯಮಗಳು

**33. ಪರಿನಿಯಮಗಳು.-** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಪರಿನಿಯಮಗಳು ವಿಶ್ವವಿದ್ಯಾಲಯಕ್ಕೆ ಮತ್ತು ಸಿಬ್ಬಂದಿಗೆ ಸಂಬಂಧಿಸಿದ ಎಲ್ಲಾ ಅಥವಾ ಯಾವುದೇ ವಿಷಯಕ್ಕೆ ಈ ಕೆಳಗಿನಂತೆ ಉಪಬಂಧ ಕಲ್ಪಿಸಬಹುದು, ಎಂದರೆ:-

(i) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಕಾರ್ಯಕಲಾಪಗಳನ್ನು ನಡೆಸುವ ಮತ್ತು ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸದಿರುವ ಸಂಸ್ಥೆಗಳ ರಚನೆಯ ಕಾರ್ಯವಿಧಾನ;

(ii) 52ನೇ ಪ್ರಕರಣಕ್ಕೆ ಒಳಪಟ್ಟು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ವಿಶ್ವವಿದ್ಯಾಲಯ ದತ್ತಿ ನಿಧಿ, ಸಾಮಾನ್ಯ ನಿಧಿ ಹಾಗೂ ಅಭಿವೃದ್ಧಿ ನಿಧಿಗಳ ನಿರ್ವಹಣೆ;

(iii) ಕುಲಪತಿಗಳು, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರ ನೇಮಕಾತಿಯ ನಿಬಂಧನೆಗಳು ಹಾಗೂ ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಪ್ರಕಾರ್ಯಗಳು;

(iv) ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ, ಅಧ್ಯಾಪಕರ ಮತ್ತು ನೌಕರರ ನೇಮಕಾತಿ ವಿಧಾನ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(v) ವಿಶ್ವವಿದ್ಯಾಲಯ ಹಾಗೂ ಅದರ ಅಧಿಕಾರಿಗಳು, ವ್ಯಾಸಂಗ ವಿಭಾಗದ (ಫ್ಯಾಕಲ್ಟಿ) ಸದಸ್ಯರು, ನೌಕರರು ಹಾಗೂ ವಿದ್ಯಾರ್ಥಿಗಳ ನಡುವೆ ಉಂಟಾದ ವಿವಾದಗಳನ್ನು ಪರಿಹರಿಸುವ ಕಾರ್ಯವಿಧಾನ;

(vi) ವಿಭಾಗಗಳು ಮತ್ತು ವ್ಯಾಸಂಗ ವಿಭಾಗಗಳ (ಫ್ಯಾಕಲ್ಟಿಗಳ) ಸೃಜನೆ, ರದ್ದತಿ ಅಥವಾ ಪುನಾರಚನೆ;

(vii) ಇತರ ವಿಶ್ವವಿದ್ಯಾಲಯಗಳು ಅಥವಾ ಉನ್ನತ ಕಲಿಕಾ ಸಂಸ್ಥೆಗಳ ಜೊತೆಯಲ್ಲಿ ಸಹಕರಿಸಬೇಕಾದ ರೀತಿ;

(viii) ಗೌರವ ಪದವಿಗಳ ನೀಡಿಕೆಯ ಕಾರ್ಯವಿಧಾನ;

(ix) ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿವೇತನ ಮಂಜೂರಾತಿಗೆ ಸಂಬಂಧಿಸಿದ ಉಪಬಂಧಗಳು;

(x) ವಿವಿಧ ವ್ಯಾಸಂಗ ಕ್ರಮಗಳಲ್ಲಿನ ಸೀಟುಗಳ ಸಂಖ್ಯೆಗೆ ಸಂಬಂಧಿಸಿದ ಕಾರ್ಯನೀತಿಗಳು ಮತ್ತು ಅಂಥ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಕಾರ್ಯವಿಧಾನ;

(xi) ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಶುಲ್ಕಕ್ಕೆ ಸಂಬಂಧಿಸಿದ ಕಾರ್ಯನೀತಿ;

(xii) ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಉಚಿತ ಶಿಕ್ಷಣಗಳು, ಪದಕಗಳು ಹಾಗೂ ಬಹುಮಾನಗಳನ್ನು ಪ್ರಾರಂಭಿಸುವುದು;

(xiii) ಹುದ್ದೆಗಳ ಸೃಜನೆ ಮತ್ತು ರದ್ದತಿಗಾಗಿನ ಕಾರ್ಯವಿಧಾನ; ಮತ್ತು

(xiv) ಪ್ರಬಂಧಕ ಮಂಡಳಿಯು ನಿರ್ಧರಿಸಬಹುದಾದ ಅಥವಾ ಈ ಅಧಿನಿಯಮದ ಅಡಿಯಲ್ಲಿ ಪರಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬೇಕಾದ ಅಗತ್ಯತೆಯುಳ್ಳ ಯಾವುದೇ ಇತರ ವಿಷಯಗಳು.

**34. ಪರಿನಿಯಮಗಳ ರಚನೆ ವಿಧಾನ.-** (1) ವ್ಯವಸ್ಥಾಪನಾ ಮಂಡಳಿಯು ರಚಿಸಿದ ಮೊದಲ ಪರಿನಿಯಮಗಳನ್ನು ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ವ್ಯವಸ್ಥಾಪನಾ ಮಂಡಳಿಯು ಸಲ್ಲಿಸಿದ ಮೊದಲ ಪರಿನಿಯಮಗಳನ್ನು ಪ್ರಬಂಧಕ ಮಂಡಳಿಯು ಪರಿಗಣಿಸತಕ್ಕದ್ದು ಹಾಗೂ ತಾನು ಅವಶ್ಯವೆಂದು ಭಾವಿಸಬಹುದಾದ ಅಂಥ ಮಾರ್ಪಾಡುಗಳು, ಯಾವುದಾದರು ಇದ್ದಲ್ಲಿ, ಅವುಗಳೊಡನೆ ತನ್ನ ಅನುಮೋದನೆಯನ್ನು ನೀಡತಕ್ಕದ್ದು.

(3) ವಿಶ್ವವಿದ್ಯಾಲಯವು, ಪ್ರಬಂಧಕ ಮಂಡಳಿಯು ಅನುಮೋದಿಸಿದ ಮೊದಲ ಪರಿನಿಯಮಗಳನ್ನು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ಪ್ರಕಟಿಸತಕ್ಕದ್ದು ಮತ್ತು ತದನಂತರ ಮೊದಲ ಪರಿನಿಯಮಗಳ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**35. ಪರಿನಿಯಮಗಳ ತಿದ್ದುಪಡಿಯ ಅಧಿಕಾರ.-** ಪ್ರಬಂಧಕ ಮಂಡಳಿಯು ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸಬಹುದು ಅಥವಾ ಪರಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ಅವನ್ನು ನಿರಸನಗೊಳಿಸಬಹುದು.

**36. ವಿನಿಯಮಗಳು.-** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ವಿನಿಯಮಗಳು ಈ ಮುಂದಿನ ಎಲ್ಲಾ ಅಥವಾ ಯಾವುದೇ ವಿಷಯಗಳಿಗೆ ಉಪಬಂಧಗಳನ್ನು ಕಲ್ಪಿಸಬಹುದು, ಎಂದರೆ:-

(i) ವಿಶ್ವವಿದ್ಯಾಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ವಿದ್ಯಾರ್ಥಿ ಪಟ್ಟಿಯಲ್ಲಿ ಅವರುಗಳ ದಾಖಲಾತಿ ಹಾಗೂ ಮುಂದುವರಿಕೆ;

(ii) ವಿಶ್ವವಿದ್ಯಾಲಯದ ಎಲ್ಲಾ ಪದವಿಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ನಿಗದಿಪಡಿಸತಕ್ಕ ವ್ಯಾಸಂಗ ಕ್ರಮಗಳು;

(iii) ಪದವಿಗಳ ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರದಾನ;

(iv) ಸಂಶೋಧನಾ ವೇತನಗಳು (ಫೆಲೋಶಿಪ್), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಪದಕಗಳು ಮತ್ತು ಬಹುಮಾನಗಳನ್ನು ನೀಡಲು ಷರತ್ತುಗಳು;

(v) ಪರೀಕ್ಷೆಗಳನ್ನು ನಡೆಸುವುದು ಹಾಗೂ ಪರೀಕ್ಷೆ ನಡೆಸುವ ಸಂಸ್ಥೆಗಳು, ಪರೀಕ್ಷಕರು, ಪರೀಕ್ಷಾ ಮೇಲ್ವಿಚಾರಕರು, ಟ್ಯಾಬುಲೇಟರ್‌ಗಳು ಮತ್ತು ಮಾಡರೇಟರ್‌ಗಳ ನೇಮಕಾತಿ ವಿಧಾನ ಮತ್ತು ಷರತ್ತುಗಳು ಹಾಗೂ ಅವರ ಕರ್ತವ್ಯಗಳು;

(vi) ವಿಶ್ವವಿದ್ಯಾಲಯದ ಪರೀಕ್ಷೆಗಳಿಗೆ, ಪದವಿಗಳಿಗೆ ಹಾಗೂ ಇತರ ಶೈಕ್ಷಣಿಕ ಪ್ರಶಸ್ತಿಗಳಿಗೆ ಪ್ರವೇಶಕ್ಕೆ ವಿಧಿಸತಕ್ಕ ಶುಲ್ಕ;

(vii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನಲ್ಲಿ ವಿದ್ಯಾರ್ಥಿಗಳ ನಿವಾಸಕ್ಕಾಗಿ ಷರತ್ತುಗಳು;

(viii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಶಿಸ್ತು ಪಾಲನೆ; ಮತ್ತು

(ix) ಈ ಅಧಿನಿಯಮದ ಅಡಿಯಲ್ಲಿನ ಪರಿನಿಯಮಗಳಲ್ಲಿ ಉಪಬಂಧ ಕಲ್ಪಿಸಬಹುದಾಂಥ ಇತರ ಎಲ್ಲಾ ವಿಷಯಗಳು.

**37. ವಿನಿಯಮಗಳ ರಚನೆ ವಿಧಾನ.-** ವಿನಿಯಮಗಳನ್ನು ಶೈಕ್ಷಣಿಕ ಪರಿಷತ್ತು ರಚಿಸತಕ್ಕದ್ದು ಹಾಗೂ ವ್ಯವಸ್ಥಾಪನಾ ಮಂಡಳಿಯು ಅನುಮೋದಿಸತಕ್ಕದ್ದು.

**38. ವಿನಿಯಮಗಳ ತಿದ್ದುಪಡಿಗೆ ಅಧಿಕಾರ.-** ವ್ಯವಸ್ಥಾಪನಾ ಮಂಡಳಿಯ ಅನುಮೋದನೆಯೊಡನೆ ಶೈಕ್ಷಣಿಕ ಪರಿಷತ್ತು ಹೊಸ ವಿನಿಯಮಗಳನ್ನು ಅಥವಾ ಹೆಚ್ಚುವರಿ ವಿನಿಯಮಗಳನ್ನು ರಚಿಸಬಹುದು ಅಥವಾ ವಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ನಿರಸನಗೊಳಿಸಬಹುದು.

**39. ಶುಲ್ಕ ನಿಗಧಿ.-** (1) 9ನೇ ಪ್ರಕರಣದ ಪರಂತುಕದ ಅಡಿಯಲ್ಲಿ ರಾಜ್ಯ ಸರ್ಕಾರದ ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡಲಾದ ಪ್ರವೇಶಗಳಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳಲ್ಲಿನ ಶೇಕಡಾ ನಲವತ್ತರಷ್ಟು ಪ್ರವೇಶಗಳ ಸಂಬಂಧದಲ್ಲಿ ಶುಲ್ಕವು ಸರ್ಕಾರ ಮತ್ತು ವಿಶ್ವವಿದ್ಯಾಲಯವು ಸಮ್ಮತಾಭಿಪ್ರಾಯದ ಒಪ್ಪಂದದ ಪ್ರಕಾರ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) ಅಧಿನಿಯಮ, 2006ರ (2006ರ ಕರ್ನಾಟಕ ಅಧಿನಿಯಮ 8) ಅನುಸಾರವಾಗಿ ಸರ್ಕಾರಿ ಸೀಟುಗಳಿಗಾಗಿ ರಾಜ್ಯ ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸಿದಂತೆ ಇರತಕ್ಕದ್ದು.

(2) ವಿಶ್ವವಿದ್ಯಾಲಯದ ಇತರ ಸೀಟುಗಳಿಗೆ ಸಂಬಂಧಿಸಿದಂತೆ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳು (ಪ್ರವೇಶ, ನಿಯಂತ್ರಣ ಮತ್ತು ಶುಲ್ಕ ನಿಗದಿ) ಅಧಿನಿಯಮ, 2006ರ (2006ರ ಕರ್ನಾಟಕ ಅಧಿನಿಯಮ 8) 6ನೇ ಪ್ರಕರಣದ ಉಪಬಂಧಗಳ ಅನುಸಾರವಾಗಿ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರ ಅಧ್ಯಕ್ಷತೆಯ ಅಡಿಯಲ್ಲಿ ರಚಿಸಲಾದ ಶುಲ್ಕ ನಿಯಂತ್ರಣ ಸಮಿತಿಯ ಮೂಲಕ ಶುಲ್ಕವನ್ನು ನಿಗದಿಪಡಿಸತಕ್ಕದ್ದು. ಈ ಪ್ರಕರಣದ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವನ್ನು ಖಾಸಗಿ ಅನುದಾನರಹಿತ ವೃತ್ತಿಪರ ಶಿಕ್ಷಣ ಸಂಸ್ಥೆ ಎಂದು ಭಾವಿಸತಕ್ಕದ್ದು.

## ಅಧ್ಯಾಯ – VI
## ಸಂಕೀರ್ಣ

**40. ನೌಕರರ ಸೇವಾ ಷರತ್ತುಗಳು.-** (1) ಪರಿನಿಯಮಗಳ ಮತ್ತು ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಥವಾ ನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳು, ಯಾವುದಾದರೂ ಇದ್ದಲ್ಲಿ, ಅವುಗಳಿಗೆ ಒಳಪಟ್ಟು ಪ್ರತಿಯೊಬ್ಬ ನೌಕರನು ಲಿಖಿತ ಕರಾರಿನ ಅಡಿಯಲ್ಲಿ ನೇಮಕಗೊಳ್ಳತಕ್ಕದ್ದು ಮತ್ತು ಅದನ್ನು ವಿಶ್ವವಿದ್ಯಾಲಯದಲ್ಲಿ ಇಟ್ಟುಕೊಳ್ಳತಕ್ಕದ್ದು ಹಾಗೂ ಅದರ ಪ್ರತಿಯನ್ನು ಸಂಬಂಧಪಟ್ಟ ನೌಕರನಿಗೆ ನೀಡತಕ್ಕದ್ದು.

(2) ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಕಾರ್ಯವಿಧಾನಗಳ ಮೂಲಕ ನಿಯಂತ್ರಿಸತಕ್ಕದ್ದು.

(3) ಕರಾರಿನಿಂದಾಗಿ ವಿಶ್ವವಿದ್ಯಾಲಯ ಮತ್ತು ನೌಕರನ ಮಧ್ಯದಲ್ಲಿ ಉದ್ಭವಿಸಬಹುದಾದ ಯಾವುದೇ ವಿವಾದವನ್ನು, ಲಿಖಿತ ಕರಾರಿನಲ್ಲಿ ಉಪಬಂಧಿಸಿದ ವಿಧಾನದಲ್ಲಿ ಹಾಗೂ ಪರಿನಿಯಮಗಳ ಅನುಸಾರವಾಗಿ ಪರಿಹರಿಸತಕ್ಕದ್ದು.

**41. ಮೇಲ್ಮನವಿ ಹಕ್ಕು.-** ವಿಶ್ವವಿದ್ಯಾಲಯವು ತನ್ನ ನೌಕರರ ಅಥವಾ ವಿದ್ಯಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡ ಸಂದರ್ಭದಲ್ಲಿ, ಬಾಧಿತ ನೌಕರ ಅಥವಾ ವಿದ್ಯಾರ್ಥಿಗಳು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಿದ ಅಂಥ ಪ್ರಾಧಿಕಾರಕ್ಕೆ ಮೇಲ್ಮನವಿ ಸಲ್ಲಿಸುವ ಹಕ್ಕನ್ನು ಹೊಂದಿರತಕ್ಕದ್ದು.

**42. ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿ.-** ವಿಶ್ವವಿದ್ಯಾಲಯವು, ತನ್ನ ನೌಕರರ ಪ್ರಯೋಜನಕ್ಕಾಗಿ, ಪರಿನಿಯಮಗಳು ಮತ್ತು ಜಾರಿಯಲ್ಲಿರುವ ಕಾನೂನುಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿಯನ್ನು ರಚಿಸತಕ್ಕದ್ದು ಹಾಗೂ ಅಂಥ ವಿಮಾ ಯೋಜನೆಗಳನ್ನು ಒದಗಿಸತಕ್ಕದ್ದು.

**43. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು.-** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಇತರ ಸಂಸ್ಥೆಯ ಸದಸ್ಯನಾಗಿ ಯಾವೊಬ್ಬ ವ್ಯಕ್ತಿಯು ಸೂಕ್ತವಾಗಿ ಆಯ್ಕೆಯಾಗಿದ್ದಾನೆಯೇ ಅಥವಾ ನೇಮಕಗೊಂಡಿದ್ದಾನೆಯೇ ಅಥವಾ ಅದಕ್ಕೆ ಅರ್ಹನಾಗಿದ್ದಾನೆಯೇ ಎಂಬ ಯಾವುದೇ ಪ್ರಶ್ನೆ ಉದ್ಭವಿಸಿದರೆ, ಆ ವಿಷಯವನ್ನು ತೀರ್ಮಾನಕ್ಕಾಗಿ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**44. ಸಮಿತಿಗಳ ರಚನೆ.-** 23ನೇ ಪ್ರಕರಣದಲ್ಲಿ ನಮೂದಿಸಿದ ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಅಧಿಕಾರವನ್ನು ಹೊಂದಿರುವ ಅಂಥ ಸದಸ್ಯರನ್ನು ಒಳಗೊಂಡ ಅಂಥ ಪ್ರಾಧಿಕಾರದ ಒಂದು ಸಮಿತಿಯನ್ನು ರಚಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**45. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು.-** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಂಸ್ಥೆಯ ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ಪೈಕಿ ಯಾವುದೇ ಸ್ಥಾನವು ಆಕಸ್ಮಿಕವಾಗಿ ಖಾಲಿಯಾದರೆ, ಯಾರ ಸ್ಥಾನವು ಖಾಲಿಯಾಗಿ ತುಂಬಬೇಕಾಗಿ ಬಂದಿದೆಯೋ ಆ ಸದಸ್ಯನನ್ನು ಯಾವ ರೀತಿಯಲ್ಲಿ ಆರಿಸಲಾಗಿತ್ತೋ ಅದೇ ರೀತಿಯಲ್ಲಿ ಹೊಸ ಸದಸ್ಯನನ್ನು ಆರಿಸಿ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ಖಾಲಿ ಸ್ಥಾನವನ್ನು ಭರ್ತಿ ಮಾಡಿದ ವ್ಯಕ್ತಿಯು ಆತನು ಯಾವ ಸದಸ್ಯನ ಸ್ಥಾನದಲ್ಲಿ ಭರ್ತಿಯಾಗಿರುವನೋ ಆ ಸದಸ್ಯನು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯನಾಗಿ ಉಳಿಯುತ್ತಿದ್ದ ಬಾಕಿ ಅವಧಿಯವರೆಗೆ ಮಾತ್ರ ಸದಸ್ಯನಾಗಿರತಕ್ಕದ್ದು.

**46. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.-** ಈ ಅಧಿನಿಯಮ ಅಥವಾ ಪರಿನಿಯಮಗಳು ಅಥವಾ ನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ವಿಶ್ವವಿದ್ಯಾಲಯದ ಯಾವೊಬ್ಬ ಅಧಿಕಾರಿ ಅಥವಾ ಇತರ ನೌಕರರ ವಿರುದ್ಧ ಯಾವುದೇ ದಾವೆ ಅಥವಾ ಇತರ ಕಾನೂನು ವ್ಯವಹರಣೆಗಳನ್ನು ನಡೆಸಲು ಅವಕಾಶ ಇರತಕ್ಕದ್ದಲ್ಲ.

**47. ತಾತ್ಕಾಲಿಕ ಉಪಬಂಧಗಳು.-** ಈ ಅಧಿನಿಯಮ ಮತ್ತು ಪರಿನಿಯಮಗಳ ಯಾವುದೇ ಇತರ ಉಪಬಂಧಗಳಲ್ಲಿ ಏನೇ ಇದ್ದರೂ,-

(i) ಮೊದಲ ಕುಲಪತಿ ಮತ್ತು ಸಹಕುಲಪತಿ, ಯಾರಾದರೂ ಇದ್ದರೆ, ಅವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(ii) ಮೊದಲ ಕುಲಸಚಿವರನ್ನು ಮತ್ತು ಮೊದಲ ಹಣಕಾಸು ಅಧಿಕಾರಿಯವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು; ಮತ್ತು

(iii) ಮೊದಲ ವ್ಯವಸ್ಥಾಪನ ಮಂಡಳಿ, ಮೊದಲ ಹಣಕಾಸು ಸಮಿತಿ, ಮೊದಲ ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಹಾಗೂ ಮೊದಲ ಶೈಕ್ಷಣಿಕ ಪರಿಷತ್ತನ್ನು ಕುಲಾಧಿಪತಿಯವರು ರಚಿಸತಕ್ಕದ್ದು.

**48. ಶಾಶ್ವತ ಶಾಸನಬದ್ಧ ದತ್ತಿ ನಿಧಿ.-** (1) ವಿಶ್ವವಿದ್ಯಾಲಯವು, ಕನಿಷ್ಠ ಇಪ್ಪತ್ತೈದು ಕೋಟಿ ರೂಪಾಯಿಗಳನ್ನುಳ್ಳ ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು ಇದರ ಪೈಕಿ ಕನಿಷ್ಠ ಹದಿನೈದು ಕೋಟಿ ರೂಪಾಯಿಗಳು ನಗದು ರೂಪದಲ್ಲಿ ಮತ್ತು ಇನ್ನುಳಿದದ್ದು ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ಇರತಕ್ಕದ್ದು ಮತ್ತು ಇದನ್ನು ತಾನಾಗಿಯೆ ಹೆಚ್ಚಿಸಬಹುದಾಗಿದ್ದು ಆದರೆ ಕಡಿಮೆ ಮಾಡತಕ್ಕದ್ದಲ್ಲ:

ಪರಂತು, ಬೆಂಗಳೂರು ಅಥವಾ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊರಗಿರುವ ವಿಶ್ವವಿದ್ಯಾಲಯದ ಸಂದರ್ಭದಲ್ಲಿ ಕನಿಷ್ಠ ಹತ್ತು ಕೋಟಿ ರೂಪಾಯಿಗಳು ನಗದು ರೂಪದಲ್ಲಿರತಕ್ಕದ್ದು ಮತ್ತು ಉಳಿದ ಐದು ಕೋಟಿ ರೂಪಾಯಿಗಳು ಬ್ಯಾಂಕ್ ಗ್ಯಾರಂಟಿಯ ರೂಪದಲ್ಲಿರತಕ್ಕದ್ದು.

(2) ವಿಶ್ವವಿದ್ಯಾಲಯವು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಹಣವನ್ನು ಹೂಡಲು ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯವು ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಗೆ ವರ್ಗಾವಣೆ ಮಾಡಬಹುದು. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನೂ ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(4) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಿದ ವರಮಾನದ ಶೇಕಡಾ ಎಪ್ಪತ್ತೈದರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತೈದರಷ್ಟನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಯಲ್ಲಿ ಪುನ: ತೊಡಗಿಸತಕ್ಕದ್ದು.

**49. ವಿಶ್ವವಿದ್ಯಾಲಯದ ದತ್ತಿ ನಿಧಿ.-** (1) ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ನಿಧಿಗಳನ್ನು ಒಳಗೊಂಡ ವಿಶ್ವವಿದ್ಯಾಲಯದ ದತ್ತಿ ನಿಧಿಯನ್ನು ವಿಶ್ವವಿದ್ಯಾಲಯವು ಸ್ಥಾಪಿಸತಕ್ಕದ್ದು. ಇದು ಕಾಲಕಾಲಕ್ಕೆ ಸ್ವೀಕರಿಸಬಹುದಾದ ದೇಣಿಗೆಗಳು ಮತ್ತು ಇತರ ನಿಧಿಗಳನ್ನು ಒಳಗೊಂಡಿರತಕ್ಕದ್ದು.

(2) ವಿಶ್ವವಿದ್ಯಾಲಯವು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ವಿಶ್ವವಿದ್ಯಾಲಯದ ದತ್ತಿನಿಧಿಯನ್ನು ಹೂಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯ ದತ್ತಿ ನಿಧಿಯು, ವಿಶ್ವವಿದ್ಯಾಲಯವು ತನ್ನ ಸಾಮಾಜಿಕ ಧ್ಯೇಯೋದ್ದೇಶಗಳನ್ನು ನೆರವೇರಿಸುವ ಸಂದರ್ಭದಲ್ಲಿ ಮತ್ತು/ಅಥವಾ ಮುಂಗಾಣದ ಸನ್ನಿವೇಶದಲ್ಲಿ ಉದ್ಭವಿಸಬಹುದಾದ ಹಣಕಾಸು ಸವಾಲುಗಳಿಂದ ತನ್ನನ್ನು ರಕ್ಷಿಸಿಕೊಳ್ಳುವುದಕ್ಕಾಗಿ, ಸ್ವಇಚ್ಛೆಯಿಂದ ನಿರ್ವಹಿಸಿಕೊಂಡು ಬರಲು ಮತ್ತು ಜವಾಬ್ದಾರಿಯಿಂದ ಹಣ ಹೂಡಿಕೆ ಮಾಡಲು ಇಚ್ಛೆಯುಳ್ಳವರಾಗಿ ಸ್ವಯಂ ವಿಧಿಸಿಕೊಂಡ ನಿಧಿಯಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಗೆ ವರ್ಗಾಯಿಸಬಹುದು. ವಿಶ್ವವಿದ್ಯಾಲಯದ ಸಮಾಪಣೆಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನು ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(5) ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಬರುವ ವರಮಾನದ ಶೇಕಡಾ ಎಂಭತ್ತರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸದ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತರಷ್ಟನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**50. ಸಾಮಾನ್ಯ ನಿಧಿ.-** (1) ವಿಶ್ವವಿದ್ಯಾಲಯವು, ಒಂದು ಸಾಮಾನ್ಯ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯವು ವಿಧಿಸಬಹುದಾದ ಎಲ್ಲಾ ಶುಲ್ಕಗಳು;

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವುದೇ ಇತರ ಮೂಲದಿಂದ ಸ್ವೀಕರಿಸಲಾದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ದೇಣಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು ಅಥವಾ ವಂತಿಗೆಗಳು;

(2) ಸಾಮಾನ್ಯ ನಿಧಿಗೆ ಜಮಾ ಮಾಡುವ ನಿಧಿಗಳನ್ನು ವಿಶ್ವವಿದ್ಯಾಲಯದ ಎಲ್ಲಾ ಆವರ್ತಕ ವೆಚ್ಚಗಳನ್ನು ಭರಿಸಲು ಉಪಯೋಗಿಸಿಕೊಳ್ಳತಕ್ಕದ್ದು.

**51. ಅಭಿವೃದ್ಧಿ ನಿಧಿ.-** (1) ವಿಶ್ವವಿದ್ಯಾಲಯವು, ಒಂದು ಅಭಿವೃದ್ಧಿ ನಿಧಿಯನ್ನು ಸಹ ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:-

(i) ವಿದ್ಯಾರ್ಥಿಗಳಿಂದ ವಿಧಿಸಬಹುದಾದ ಅಭಿವೃದ್ಧಿ ಶುಲ್ಕಗಳು;

(ii) ವಿಶ್ವವಿದ್ಯಾಲಯದ ಅಭಿವೃದ್ಧಿಯ ಉದ್ದೇಶಗಳಿಗಾಗಿ ಯಾವುದೇ ಇತರ ಮೂಲಗಳಿಂದ ಸ್ವೀಕರಿಸಿದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ವಂತಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು ಅಥವಾ ವಂತಿಗೆಗಳು; ಮತ್ತು

(v) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಲಾದ ಎಲ್ಲಾ ವರಮಾನಗಳು.

(2) ಅಭಿವೃದ್ಧಿ ನಿಧಿಗೆ ಕಾಲಕಾಲಕ್ಕೆ ಜಮಾ ಮಾಡಿದ ನಿಧಿಯನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಉಪಯೋಗಿಸಕೊಳ್ಳತಕ್ಕದ್ದು.

**52. ನಿಧಿಗಳ ನಿರ್ವಹಣೆ.-** 48, 49, 50 ಮತ್ತು 51ನೇ ಪ್ರಕರಣಗಳಡಿಯಲ್ಲಿ ಸ್ಥಾಪಿಸಲಾದ ನಿಧಿಗಳನ್ನು ಪ್ರಬಂಧಕ ಮಂಡಳಿಯ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ನಿಯಂತ್ರಿಸತಕ್ಕದ್ದು ಹಾಗೂ ನಿರ್ವಹಿಸತಕ್ಕದ್ದು.

**53. ವಾರ್ಷಿಕ ವರದಿ.-** (1) ವಿಶ್ವವಿದ್ಯಾಲಯದ ವಾರ್ಷಿಕ ವರದಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ಸಿದ್ಧಪಡಿಸತಕ್ಕದ್ದು ಮತ್ತು ಅದರ ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಪ್ರಬಂಧಕ ಮಂಡಳಿಯು ವಾರ್ಷಿಕ ವರದಿಯನ್ನು ತನ್ನ ಸಭೆಯಲ್ಲಿ ಪರಿಗಣಿಸತಕ್ಕದ್ದು ಹಾಗೂ ಅದನ್ನು ಮಾರ್ಪಾಡುಗಳೊಡನೆ ಅಥವಾ ಮಾರ್ಪಾಡುಗಳಿಲ್ಲದೆ ಅನುಮೋದಿಸಬಹುದು.

(3) ಪ್ರಬಂಧಕ ಮಂಡಳಿಯು ಸೂಕ್ತವಾಗಿ ಅನುಮೋದಿಸಿದ ವಾರ್ಷಿಕ ವರದಿಯ ಒಂದು ಪ್ರತಿಯನ್ನು ಪ್ರತಿವರ್ಷದ ಮಾರ್ಚ್ ತಿಂಗಳಿನಲ್ಲಿ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ಡಿಸೆಂಬರ್ 31ಕ್ಕೆ ಮೊದಲು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**54. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.-** (1) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕ ಪತ್ರ ಮತ್ತು ಜಮಾ ಖರ್ಚು ಪಟ್ಟಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ಸಿದ್ಧಪಡಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯಕ್ಕೆ ಎಲ್ಲಾ ಮೂಲಗಳಿಂದ ಪ್ರಾಪ್ತವಾಗುವ ಅಥವಾ ಸ್ವೀಕರಿಸಲಾಗುವ ಎಲ್ಲಾ ನಿಧಿಗಳು ಹಾಗೂ ವಿತರಿಸಿದ ಅಥವಾ ಸಂದಾಯ ಮಾಡಿದ ಎಲ್ಲಾ ಮೊಬಲಗುಗಳನ್ನು ವಿಶ್ವವಿದ್ಯಾಲಯವು ನಿರ್ವಹಿಸುವ ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕಪತ್ರಗಳನ್ನು ಪ್ರತಿ ವರ್ಷವೂ ಭಾರತದ ಚಾರ್ಟೆಡ್ ಅಕೌಂಟೆಂಟ್‌ಗಳ ಸಂಸ್ಥೆಯ ಸದಸ್ಯರಾಗಿರುವ ಒಬ್ಬ ಲೆಕ್ಕಪರಿಶೋಧಕರಿಂದ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಲೆಕ್ಕಪರಿಶೋಧನಾ ವರದಿಯೊಡನೆ, ಪ್ರತಿ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ನವೆಂಬರ್ 30ಕ್ಕೂ ಮೊದಲು ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(4) ವಾರ್ಷಿಕ ಲೆಕ್ಕಪತ್ರಗಳು, ಜಮಾಖರ್ಚು ಪಟ್ಟಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಪ್ರಬಂಧಕ ಮಂಡಳಿಯು ತನ್ನ ಸಭೆಯಲ್ಲಿ ಪರ್ಯಾಲೋಚಿಸತಕ್ಕದ್ದು ಮತ್ತು ಪ್ರಬಂಧಕ ಮಂಡಳಿಯು ಅದನ್ನು ತನ್ನ ಅಭಿಪ್ರಾಯಗಳೊಡನೆ ಸಂದರ್ಶಕರಿಗೆ ಹಾಗೂ ಸರ್ಕಾರಕ್ಕೆ ಪ್ರತಿ ವರ್ಷದ ಡಿಸೆಂಬರ್ 31ಕ್ಕೆ ಮೊದಲು ಕಳುಹಿಸತಕ್ಕದ್ದು.

(5) ಲೆಕ್ಕಪರಿಶೋಧಕರ ವರದಿಯಲ್ಲಿ ಯಾವುದೇ ಮುಖ್ಯ ಬದಲಾವಣೆ ಇದ್ದ ಸಂದರ್ಭದಲ್ಲಿ, ಅವುಗಳನ್ನು ಸರಿಪಡಿಸಲು, ರಾಜ್ಯ ಸರ್ಕಾರವು ವಿಶ್ವವಿದ್ಯಾಲಯಕ್ಕೆ ನಿರ್ದೇಶನಗಳನ್ನು ನೀಡಬಹುದು ಮತ್ತು ಅಂಥ ನಿರ್ದೇಶನಗಳು ವಿಶ್ವವಿದ್ಯಾಲಯದ ಮೇಲೆ ಬಂಧನಕಾರಿಯಾಗಿರತಕ್ಕದ್ದು.

**55. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ.-** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಮಿತಿಯ ಯಾವುದೇ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ ಅಥವಾ ಗೊತ್ತುವಳಿಯು ಅಥವಾ ವಿಶ್ವವಿದ್ಯಾಲಯದ ಸ್ವಾಧೀನದಲ್ಲಿರುವ ಇತರ ದಾಖಲೆಗಳು ಅಥವಾ ವಿಶ್ವವಿದ್ಯಾಲಯವು ಯುಕ್ತವಾಗಿ ನಿರ್ವಹಿಸುವ ಯಾವುದೇ ರಿಜಿಸ್ಟರ್‌ನಲ್ಲಿಯ ಯಾವುದೇ ನಮೂದುಗಳ ಪ್ರತಿಯನ್ನು, ಅದರ ಮೇಲೆ ಕುಲಸಚಿವರು ಪ್ರಮಾಣೀಕರಿಸಿದ್ದರೆ, ಅದನ್ನು ಅಂಥ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ, ಗೊತ್ತುವಳಿ ಅಥವಾ ದಾಖಲೆ ಅಥವಾ ರಿಜಿಸ್ಟರ್‌ನಲ್ಲಿ ಇರುವ ನಮೂದನ್ನು ಮೇಲ್ನೋಟದ ಸಾಕ್ಷ್ಯವೆಂಬುದಾಗಿ ಸ್ವೀಕರಿಸತಕ್ಕದ್ದು ಮತ್ತು

ವಿಷಯಗಳ ಸಾಕ್ಷಿಯಾಗಿ ಅಂಗೀಕರಿಸತಕ್ಕದ್ದು ಹಾಗೂ ಮೂಲ ದಾಖಲೆಗಳನ್ನೇ ಸಲ್ಲಿಸಿದ್ದರೆ ಅದನ್ನು, ದಾಖಲಿಸಿರುವ ವಿಷಯಗಳು ಮತ್ತು ವಹಿವಾಟುಗಳ ಸಾಕ್ಷ್ಯವಾಗಿ ಅಂಗೀಕರಿಸಲಾಗುತ್ತಿತ್ತೋ, ಅದೇ ರೀತಿಯಲ್ಲಿ ಇವನ್ನೂ ಸಾಕ್ಷ್ಯವಾಗಿ ಅಂಗೀಕರಿಸತಕ್ಕದ್ದು.

**56. ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ.-** ರಾಜ್ಯಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಥವಾ ಅದರಲ್ಲಿ ಇರುವ ಯಾವುವೇ ಉಪಬಂಧಗಳನ್ನು ಅಥವಾ ಅದರಡಿಯಲ್ಲಿ ರಚಿಸಿದ ಯಾವುವೇ ನಿಯಮಗಳು ಅಥವಾ ಆದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿರ್ದೇಶನ ನೀಡುವುದು ಅವಶ್ಯವೆಂದು ಅಥವಾ ಉಚಿತವೆಂದು ಅಭಿಪ್ರಾಯಪಟ್ಟಲ್ಲಿ ಅದು ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ ಅಥವಾ ಸಂದರ್ಭಾನುಸಾರವಾಗಿ ವ್ಯವಸ್ಥಾಪನಾ ಮಂಡಳಿಯು ಅಂಥ ಪ್ರತಿಯೊಂದು ನಿರ್ದೇಶನವನ್ನು ಪಾಲಿಸತಕ್ಕದ್ದು.

**57. ದಂಡಗಳು.-** (1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿತವಾದ ನಿಯಮಗಳು ಉಪಬಂಧಗಳನ್ನು ಅಥವಾ ಯಾವುದೇ ಪರೀಕ್ಷಾ ವಿಷಯಗಳನ್ನು ಅಥವಾ ಪದವಿಗಳನ್ನು ನೀಡುವುದಕ್ಕೆ ಅಥವಾ ಅಂಕಪಟ್ಟಿಗಳನ್ನು ನೀಡುವುದಕ್ಕೆ ಸಂಬಂಧಪಟ್ಟ ವಿಷಯಗಳಲ್ಲಿ ಉಲ್ಲಂಘನೆಗಳನ್ನು ಮಾಡುವ ಯಾವೊಬ್ಬ ವ್ಯಕ್ತಿಯು, ಅಪರಾಧ ನಿರ್ಣಯವಾದ ಮೇಲೆ, ಐವತ್ತು ಸಾವಿರ ರೂಪಾಯಿಗಳಿಗೆ ಕಡಿಮೆಯಲ್ಲದ ಆದರೆ ಹತ್ತು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಆರು ತಿಂಗಳ ಅವಧಿಗಿಂತ ಕಡಿಮೆಯಲ್ಲದ ಆದರೆ ಎರಡು ವರ್ಷಗಳ ಅವಧಿಯವರೆಗೆ ವಿಸ್ತರಿಸಬಹುದಾದ ಕಾರಾವಾಸದಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು:

ಪರಂತು, ಅಪರಾಧವನ್ನು ಎಸಗುವಲ್ಲಿ ವಿಶ್ವವಿದ್ಯಾಲಯವೂ ಸಹ ಒಳಗೊಂಡಿರುವಲ್ಲಿ, ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಈ ಅಧಿನಿಯಮದ ಅಡಿಯಲ್ಲಿ ಮಂಜೂರು ಮಾಡಲಾದ ಅನುಮತಿ ಪತ್ರವನ್ನು ಹಿಂತೆಗೆದುಕೊಳ್ಳತಕ್ಕದ್ದು.

(2) ಈ ಪ್ರಕರಣದ ಅಡಿಯಲ್ಲಿಯ ದಂಡವನ್ನು ಇತರ ಯಾವುದೇ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಲಾದ ದಂಡಕ್ಕೆ ಬಾಧಕವಾಗದಂತೆ ವಿಧಿಸಬಹುದು.

**58. ಪ್ರವೇಶಿಸುವ ಮತ್ತು ಪರಿಶೋಧಿಸುವ ಅಧಿಕಾರ.-** ಈ ಉದ್ದೇಶಕ್ಕಾಗಿ, ರಾಜ್ಯಸರ್ಕಾರದಿಂದ ಪ್ರಾಧಿಕೃತಗೊಂಡ 'ಎ' ಸಮೂಹದ ಅಧಿಕಾರಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಯಾವೊಬ್ಬ ಅಧಿಕಾರಿಯು, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಶನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ 37) ಅಡಿಯಲ್ಲಿ ನಿರ್ದಿಷ್ಟಪಡಿಸಿರಬಹುದಾದ ಅಂಥ ಷರತ್ತುಗಳಿಗೆ ಒಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ, ಆ ಅಧಿನಿಯಮದ 9ನೇ ಪ್ರಕರಣದ ಅಡಿಯಲ್ಲಿ ಉಪಬಂಧಿಸಲಾದಂತಹವೇ ಅಧಿಕಾರಗಳನ್ನು ಚಲಾಯಿಸಲು ಮತ್ತು ಪ್ರಕಾರ್ಯಗಳನ್ನು ನೆರವೇರಿಸಲು ಅಧಿಕೃತನಾದ ಅಧಿಕಾರಿ ಎಂಬುದಾಗಿ ಭಾವಿಸತಕ್ಕದ್ದು.

**59. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ನಿರ್ದೇಶನವನ್ನು ನೀಡುವ ಅಧಿಕಾರ.-** (1) ವಿಶ್ವವಿದ್ಯಾಲಯವು ತನ್ನ ರಚನೆ ಅಥವಾ ನಿಗಮನವನ್ನು ನಿಯಂತ್ರಿಸುವ ಕಾನೂನಿಗೆ ಅನುಸಾರವಾಗಿ ತನ್ನ ಸಮಾಪನವನ್ನು ಉದ್ದೇಶಿಸಿದ್ದಲ್ಲಿ, ಅದು ಕನಿಷ್ಠ ಆರು ತಿಂಗಳ ಲಿಖಿತ ಪೂರ್ವ ಸೂಚನೆಯನ್ನು (ನೋಟಿಸು) ಸರ್ಕಾರಕ್ಕೆ ನೀಡತಕ್ಕದ್ದು.

(2) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಈ ಕೆಳಗಿನವುಗಳ ಬಗ್ಗೆ, ಎಂದರೆ:-

(i) ಪದವಿಯನ್ನು ನೀಡುವುದಕ್ಕಾಗಿ ಬೋಧನೆಯ ಗುಣಮಟ್ಟ;

(ii) ಶಿಕ್ಷಣದ ಗುಣಮಟ್ಟ;

(iii) ಉನ್ನತ ಶಿಕ್ಷಣದ ವ್ಯಾಪಾರೀಕರಣವನ್ನು ತಡೆಗಟ್ಟುವುದು;

(iv) ಅಧಿನಿಯಮದ ಉಪಬಂಧಗಳ ಉಲ್ಲಂಘನೆಯ ಬಗ್ಗೆ, ಯಾವುದಾದರೂ ಇದ್ದಲ್ಲಿ,

- ಇವುಗಳ ಬಗ್ಗೆ ವಿಶ್ವವಿದ್ಯಾಲಯದ ನಿಯತಕಾಲಿಕ ಪರಿವೀಕ್ಷಣೆಯನ್ನು ನಡೆಸತಕ್ಕದ್ದು ಮತ್ತು ಸರ್ಕಾರಕ್ಕೆ ವರದಿಯನ್ನು ಕಳುಹಿಸತಕ್ಕದ್ದು.

(3) ದುರ್ವ್ಯವಹರಣೆ, ದುರಾಡಳಿತ ಮತ್ತು ಅಶಿಸ್ತು ಆಗಿದೆ ಎಂಬುದನ್ನು ಗುರುತಿಸಿದರೆ, ಸರ್ಕಾರವು, ವಿಶ್ವವಿದ್ಯಾಲಯದ ಆಡಳಿತವರ್ಗದವರಿಗೆ ಆಡಳಿತವನ್ನು ಸರಿಪಡಿಸಬೇಕೆಂದು ನಿರ್ದೇಶನಗಳನ್ನು ನೀಡತಕ್ಕದ್ದು. ನಿಯಮಿಸಬಹುದಾದ ಅಂಥ ಅವಧಿಯೊಳಗೆ ಆ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುವ ಹಕ್ಕು ಸರ್ಕಾರದಲ್ಲಿ ನಿಹಿತವಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ವಿಧಾನವು, ಸರ್ಕಾರವು ಈ ಸಂಬಂಧದಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು:

ಪರಂತು, ವಿಶ್ವವಿದ್ಯಾಲಯವು ತನ್ನ ಕಾರಣಗಳನ್ನು ಹೇಳಿಕೊಳ್ಳಲು ಸಮಂಜಸ ಅವಕಾಶಗಳನ್ನು ನೀಡಿದ ಹೊರತು ಅಂಥ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

(5) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೋಟಿಸನ್ನು ಸ್ವೀಕರಿಸಿದ ಮೇಲೆ, ಸರ್ಕಾರವು ಸಂಬಂಧಿಸಿದ ನಿಯಂತ್ರಣಾ ಪ್ರಾಧಿಕಾರದೊಡನೆ ಸಮಾಲೋಚಿಸಿ, ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ಅಥವಾ ವ್ಯಾಸಂಗ ಕ್ರಮವನ್ನು ಪರಿಸಮಾಪನಗೊಳಿಸಲು ಉದ್ದೇಶಿಸಿದ ದಿನಾಂಕದಿಂದ, ವಿಶ್ವವಿದ್ಯಾಲಯದಲ್ಲಿ ನಿಯತ ವ್ಯಾಸಂಗ ಕ್ರಮಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕೊನೆಯ ತಂಡ (ಬ್ಯಾಚ್) ತನ್ನ ವ್ಯಾಸಂಗ ಕ್ರಮವನ್ನು ಮುಗಿಸುವವರೆಗೆ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು.

**60. ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು.-** (1) 59ನೇ ಪ್ರಕರಣದ (5)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ಅದರ ಆಡಳಿತಾತ್ಮಕ ವೆಚ್ಚಗಳನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಭರಿಸತಕ್ಕದ್ದು.

(2) ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ವಿಶ್ವವಿದ್ಯಾಲಯದ ವೆಚ್ಚವನ್ನು ಭರಿಸಲು 48, 49, 50 ಮತ್ತು 51ನೇ ಪ್ರಕರಣಗಳ ಅಡಿಯಲ್ಲಿ ಉಲ್ಲೇಖಿಸಲಾದ ನಿಧಿಯು ಸಾಕಷ್ಟು ಇಲ್ಲದಿದ್ದಲ್ಲಿ, ಅಂಥ ವೆಚ್ಚವನ್ನು ಸರ್ಕಾರವು, ವಿಶ್ವವಿದ್ಯಾಲಯದ ಸ್ವತ್ತುಗಳು ಮತ್ತು ಆಸ್ತಿಗಳನ್ನು ವಿಲೇ ಮಾಡುವ ಮೂಲಕ ಭರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಸಮಾಪನೆಯು ದುರ್ವ್ಯವಹರಣೆ ಅಥವಾ ದುರಾಡಳಿತದ ಕಾರಣಗಳಿಗಾಗಿ ಆಗಿದ್ದರೆ, ಸರ್ಕಾರವು ಅಂಥ ದುರ್ವ್ಯವಹಾರಕ್ಕೆ ಅಥವಾ ದುರಾಡಳಿತಕ್ಕೆ ಹೊಣೆಯಾಗಿರುವ ವ್ಯಕ್ತಿಗಳನ್ನು ಗುರುತಿಸುವ ಮತ್ತು ಅವರ ಮೇಲೆ ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ದಂಡನೆಯನ್ನು ವಿಧಿಸಲು ಸ್ವತಂತ್ರವಾಗಿರತಕ್ಕದ್ದು.

**61. ತೊಂದರೆಗಳ ನಿವಾರಣೆಗೆ ಅಧಿಕಾರ.-** (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಅಥವಾ ಆದೇಶದ ಮೂಲಕ ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಐದು ವರ್ಷಗಳು ಮುಕ್ತಾಯವಾದ ತರುವಾಯ ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಅಧಿಸೂಚನೆ ಅಥವಾ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

**62. ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ.-** (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಉಭಯ ಸದನಗಳು ಒಪ್ಪಿದರೆ ತದನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ದತಿಯು ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವನ್ನು ಉಂಟುಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಕೆ.ದ್ವಾರಕನಾಥ್ ಬಾಬು)**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ

**DEPARTMENT OF PARLIAMENTARY AFFAIRS AND LEGISLATION SECRETARIAT**

**NOTIFICATION**

**NO. DPAL 73 SHASANA 2020, BENGALURU, DATED: 16.04.2021**

ಭಾರತ ಸಂವಿಧಾನದ ಅನುಚ್ಛೇಧ 348ರ ಖಂಡ (3)ರ ಅಡಿಯಲ್ಲಿ ರಾಜ್ಯಪಾಲರಿಂದ ಅಧಿಕೃತಗೊಳಿಸಿದ ಏಟ್ರಿಯಾ ವಿಶ್ವವಿದ್ಯಾಲಯ ಅಧಿನಿಯಮ, 2020 (2021ರ ಕರ್ನಾಟಕ ಅಧಿನಿಯಮ ಸಂಖ್ಯೆ: 22)ರ ಭಾಷಾಂತರವನ್ನು ಅಧಿಕೃತ ಆಂಗ್ಲ ಪಠ್ಯವೆಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ (ಭಾಗ-IV) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ,-

ಕರ್ನಾಟಕ ರಾಜ್ಯಪತ್ರ
ಅಧಿಕೃತವಾಗಿ ಪ್ರಕಟಿಸಲಾದುದು
ವಿಶೇಷ ರಾಜ್ಯ ಪತ್ರಿಕೆ

| ಭಾಗ – ೪ಎ<br>Part – IV A | ಬೆಂಗಳೂರು, ಶುಕ್ರವಾರ, ೧೬, ಏಪ್ರಿಲ್, ೨೦೨೧ (ಚೈತ್ರ ೨೬, ಶಕವರ್ಷ, ೧೯೪೩)<br>BENGALURU, FRIDAY, 16, APRIL, 2021 (CHAITHRA, 26, SHAKAVARSHA, 1943 | ನಂ. ೪೩೫<br>No. 435 |
|---|---|---|

## ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ ಸಚಿವಾಲಯ

## ಅಧಿಸೂಚನೆ

### ಸಂಖ್ಯೆ: ಸಂವ್ಯಶಾಇ 65 ಶಾಸನ 2020, ದಿನಾಂಕ: 16.04.2021

ಶ್ರೀ ಜಗದ್ಗುರು ಮುರುಘರಾಜೇಂದ್ರ ವಿಶ್ವವಿದ್ಯಾಲಯ ವಿಧೇಯಕ, 2020 ಇದಕ್ಕೆ 2021ರ ಏಪ್ರಿಲ್ ತಿಂಗಳ 15 ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2021 ರ ಕರ್ನಾಟಕ ಅಧಿನಿಯಮ ಸಂಖ್ಯೆ: 21ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ (ಭಾಗ IV) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ,-

### 2021ರ ಕರ್ನಾಟಕ ಅಧಿನಿಯಮ ಸಂಖ್ಯೆ:21

(2021 ರ ಏಪ್ರಿಲ್ ತಿಂಗಳ 16ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

### ಶ್ರೀ ಜಗದ್ಗುರು ಮುರುಘರಾಜೇಂದ್ರ ವಿಶ್ವವಿದ್ಯಾಲಯ ಅಧಿನಿಯಮ, 2020

(2021ರ ಏಪ್ರಿಲ್ ತಿಂಗಳ 15ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮೋದನೆಯನ್ನು ಪಡೆಯಲಾಗಿದೆ)

ಸಾಮಾನ್ಯ, ತಾಂತ್ರಿಕ, ಆರೋಗ್ಯ, ವ್ಯವಸ್ಥಾಪನೆ, ಕಾನೂನು, ಜೀವ ವಿಜ್ಞಾನಗಳು ಮತ್ತು ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಪ್ರಾಸಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯ ಶಿಕ್ಷಣದ ಪ್ರಗತಿಯನ್ನು ಪ್ರೋತ್ಸಾಹಿಸುವುದಕ್ಕೆ ಮತ್ತು ಕೈಗೊಳ್ಳುವುದಕ್ಕೆ ಶ್ರೀ ಜಗದ್ಗುರು ಮುರುಘರಾಜೇಂದ್ರ ವಿದ್ಯಾಪೀಠ (ನೋಂ), ಚಿತ್ರದುರ್ಗ, ಇವರ ಮೂಲಕ ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದಕ್ಕಾಗಿ ಒಂದು ಅಧಿನಿಯಮ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಸಾಮಾನ್ಯ, ತಾಂತ್ರಿಕ, ಆರೋಗ್ಯ, ವ್ಯವಸ್ಥಾಪನೆ, ಕಾನೂನು, ಜೀವ ವಿಜ್ಞಾನಗಳು ಮತ್ತು ಅವುಗಳಿಗೆ ಸಂಬಂಧಿಸಿದ ಅಥವಾ ಅವುಗಳಿಗೆ ಪ್ರಾಸಂಗಿಕವಾದ ವಿಷಯಗಳಲ್ಲಿ ವಿಶ್ವವಿದ್ಯಾಲಯ ಶಿಕ್ಷಣದ ಪ್ರಗತಿಯನ್ನು ಪ್ರೋತ್ಸಾಹಿವುದಕ್ಕೆ ಮತ್ತು ಕೈಗೊಳ್ಳುವುದಕ್ಕೆ ಶ್ರೀ ಜಗದ್ಗುರು ಮುರುಘರಾಜೇಂದ್ರ ವಿದ್ಯಾಪೀಠ (ನೋಂ), ಚಿತ್ರದುರ್ಗ, ಇವರ ಮೂಲಕ ಖಾಸಗಿ ವಲಯದಲ್ಲಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತೊಂದನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**ಅಧ್ಯಾಯ - I**

**ಪ್ರಾರಂಭಿಕ**

1. **ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ**.- (1) ಈ ಅಧಿನಿಯಮವನ್ನು ಶ್ರೀ ಜಗದ್ಗುರು ಮುರುಘರಾಜೇಂದ್ರ ವಿಶ್ವವಿದ್ಯಾಲಯ ಅಧಿನಿಯಮ, 2020 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

2. **ಪರಿಭಾಷೆಗಳು**.- ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) "ಶೈಕ್ಷಣಿಕ ಪರಿಷತ್ತು (ಅಕೆಡೆಮಿಕ್ ಕೌನ್ಸಿಲ್)" ಎಂದರೆ, 25ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿಸಲಾದ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು;

(ಬಿ) "ಕಾರ್ಯಸೂಚಿ ವಿಷಯಗಳು", ಎಂದರೆ, ಪರಿನಿಯಮಗಳಲ್ಲಿ ಹೆಸರಿಸಬಹುದಾದ ಮತ್ತು ಒಂದು ಸಭೆಯಲ್ಲಿ ಆ ವಿಷಯಗಳನ್ನು ಮತ್ತು ಕಲಾಪಗಳನ್ನು ಅನುಮೋದಿಸಬಹುದೆಂದು ತಮ್ಮ ಸಮ್ಮತಿ ಸೂಚಿಸಿ ಕುಲಾಧಿಪತಿಯವರು ಮುಂಚಿತವಾಗಿಯೇ ಲಿಖಿತ ಅನುಮೋದನೆಯನ್ನು ಕೊಟ್ಟಿದ್ದಾಗ ಮಾತ್ರವೇ ಸಂದರ್ಭಾನುಸಾರ ಪ್ರಬಂಧಕರ ಮಂಡಳಿ ಅಥವಾ ವ್ಯವಸ್ಥಾಪನಾ ಮಂಡಳಿ ಅಥವಾ ಶೈಕ್ಷಣಿಕ ಪರಿಷತ್ತು ಅಥವಾ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳು ಅಥವಾ ಯಾವುದೇ ಸಮಿತಿಯವರು ಕಾರ್ಯಸೂಚಿಯಲ್ಲಿ ಸೇರಿಸಬಹುದಾದ ಅಥವಾ ಸಭೆಯಲ್ಲಿ ಚರ್ಚೆಗೆ ತೆಗೆದುಕೊಂಡು ನಿರ್ಣಯವನ್ನು ಕೊಡಬಹುದಾದ ಎಲ್ಲಾ ವಿಷಯಗಳು ಮತ್ತು ಕಲಾಪಗಳು;

(ಸಿ) "ಪ್ರಬಂಧಕರ ಮಂಡಳಿ" ಎಂದರೆ, 23ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಪ್ರಬಂಧಕರ ಮಂಡಳಿ;

(ಡಿ) "ವ್ಯವಸ್ಥಾಪನಾ ಮಂಡಳಿ" ಎಂದರೆ 24ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದಂತೆ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿ;

(ಇ) "ಕುಲಾಧಿಪತಿ", "ಕುಲಪತಿ", "ಸಹಕುಲಪತಿ" ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ ಮತ್ತು ಸಹಕುಲಪತಿ;

(ಎಫ್) "ಕ್ಯಾಂಪಸ್" ಎಂದರೆ, ಅದು ರಾಜ್ಯದೊಳಗೆ ಇರುವ ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುವ ಒಂದು ಕ್ಯಾಂಪಸ್;

(ಜಿ) "ಸಮಿತಿಗಳು" ಎಂದರೆ, ಈ ಅಧಿನಿಯಮದಡಿಯಲ್ಲಿ ರೂಪಿಸಲಾದ ಸಮಿತಿಗಳು ಅಥವಾ ಸಂದರ್ಭಾನುಸಾರವಾಗಿ ವಿಶ್ವವಿದ್ಯಾಲಯದ ವಿವಿಧ ಕಾರ್ಯಕರ್ತರು ರಚಿಸಿರುವ ಸಮಿತಿಗಳು ಮತ್ತು ಅದರಲ್ಲಿ ನಾಮನಿರ್ದೇಶನ ಸಮಿತಿ, ಹಣಕಾಸು ಸಮಿತಿ, ಮತ್ತು ಅಂಥ ಇತರ ಸಮಿತಿಗಳು ಒಳಗೊಳ್ಳುತ್ತವೆ;

(ಎಚ್) "ಘಟಕ ಕಾಲೇಜು" ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುತ್ತಿರುವ ಒಂದು ಕಾಲೇಜು ಅಥವಾ ಸಂಸ್ಥೆ;

(ಐ) "ಹಣಕಾಸು ಸಮಿತಿ" ಎಂದರೆ, 27ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಹಣಕಾಸು ಸಮಿತಿ;

(ಜೆ) "ಸರ್ಕಾರ" ಎಂದರೆ, ಕರ್ನಾಟಕ ಸರ್ಕಾರ;

(ಕೆ) "ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳು" ಎಂದರೆ, ವಿಶ್ವವಿದ್ಯಾಲಯ ಅನುದಾನ ಆಯೋಗ, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು, ರಾಷ್ಟ್ರೀಯ ಬೋಧಕ ಶಿಕ್ಷಣ ಪರಿಷತ್ತು, ಭಾರತೀಯ ವೈದ್ಯಕೀಯ ಪರಿಷತ್ತು, ಭಾರತೀಯ ಔಷಧ ವಿಜ್ಞಾನ ಪರಿಷತ್ತು, ರಾಷ್ಟ್ರೀಯ ಮೌಲ್ಯಮಾಪನ ಮತ್ತು ಅಧಿಮಾನ್ಯತಾ ಪರಿಷತ್ತು, ಬಾರ್ ಕೌನ್ಸಿಲ್ ಆಫ್ ಇಂಡಿಯಾ, ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಪರಿಷತ್ತು ಮುಂತಾದವುಗಳು ಮತ್ತು ಸರ್ಕಾರವನ್ನು ಒಳಗೊಂಡು ಉನ್ನತ ಶಿಕ್ಷಣದಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುವಂತೆ ನೋಡಿಕೊಳ್ಳುವುದಕ್ಕಾಗಿ ಗುಣಮಟ್ಟಗಳು ಮತ್ತು ಷರತ್ತುಗಳನ್ನು ವಿಧಿಸುವುದಕ್ಕಾಗಿ, ಕೇಂದ್ರ ಸರ್ಕಾರವು ಸ್ಥಾಪಿಸಿರುವ ಒಂದು ಸಂಸ್ಥೆ;

(ಎಲ್) "ನಿಯಮಿಸಲಾದುದು" ಎಂದರೆ, ಈ ಅಧಿನಿಯಮದಡಿಯಲ್ಲಿ ಸರ್ಕಾರವು ರಚಿಸಲಾದ ನಿಯಮಗಳ ಮೂಲಕ ನಿಯಮಿಸಲಾದುದು;

(ಎಂ) "ಒಂದು ಘಟಕ ಕಾಲೇಜಿಗೆ ಸಂಬಂಧಪಟ್ಟಂತೆ ಪ್ರಾಂಶುಪಾಲರು" ಎಂದರೆ, ಘಟಕ ಕಾಲೇಜಿನ ಮುಖ್ಯಸ್ಥರು ಮತ್ತು ಪ್ರಾಂಶುಪಾಲರು ಇಲ್ಲದಿದ್ದಲ್ಲಿ ಅಥವಾ ನೇಮಕವಾದ ಪ್ರಾಂಶುಪಾಲರ ಗೈರುಹಾಜರಿಯಲ್ಲಿ, ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ತಾತ್ಕಾಲಿಕವಾಗಿ ನೇಮಕಗೊಂಡಿರುವ ಉಪಪ್ರಾಂಶುಪಾಲರು ಅಥವಾ ಯಾವುದೇ ಇತರ ವ್ಯಕ್ತಿಯೂ ಇದರಲ್ಲಿ ಒಳಗೊಳ್ಳುತ್ತಾರೆ;

(ಎನ್) "ಕುಲಸಚಿವರು" ಎಂದರೆ, ವಿಶ್ವವಿದ್ಯಾಲಯದ ಕುಲಸಚಿವರು;

(ಒ) "ಪ್ರಾದೇಶಿಕ ಕೇಂದ್ರ" ಎಂದರೆ, ರಾಜ್ಯದೊಳಗೆ ಅಧ್ಯಯನ ಕೇಂದ್ರಗಳ ಕಾರ್ಯವನ್ನು ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ಮಾಡುವ ಉದ್ದೇಶಕ್ಕಾಗಿ ಮತ್ತು ಅಂಥ ಕೇಂದ್ರಕ್ಕೆ ಕಾರ್ಯಕಾರಿ ಪರಿಷತ್ತು ವಹಿಸಿಕೊಡಬಹುದಾದ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸುವುದಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಅಥವಾ ನಿರ್ವಹಿಸಿಕೊಂಡುಬರುವ ಒಂದು ಕೇಂದ್ರ;

(ಪಿ) ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ "ಪ್ರಾಯೋಜಕ ಪ್ರಾಧಿಕಾರ" ಅಥವಾ "ಪ್ರಾಯೋಜಕ ಸಂಸ್ಥೆ" ಎಂದರೆ ಪ್ರಾಯೋಜಕ ಟ್ರಸ್ಟ್;

(ಕ್ಯೂ) "ಪ್ರಾಯೋಜಕ ಟ್ರಸ್ಟ್" ಎಂದರೆ, ಕರ್ನಾಟಕ ಸೊಸೈಟಿಗಳ ನೋಂದಣಿ ಅಧಿನಿಯಮ, 1960ರ (1960ರ ಕರ್ನಾಟಕ ಅಧಿನಿಯಮ 17) ಅಡಿಯಲ್ಲಿ ನೊಂದಾಯಿತವಾದ ಶ್ರೀ ಜಗದ್ಗುರು ಮುರುಘರಾಜೇಂದ್ರ ವಿದ್ಯಾಪೀಠ, ಚಿತ್ರದುರ್ಗ;

(ಆರ್) "ರಾಜ್ಯ" ಎಂದರೆ, ಕರ್ನಾಟಕ ರಾಜ್ಯ;

(ಎಸ್) "ಪರಿನಿಯಮಗಳು" ಮತ್ತು "ವಿನಿಯಮಗಳು" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಅನುಕ್ರಮವಾಗಿ ವಿಶ್ವವಿದ್ಯಾಲಯದ ಪರಿನಿಯಮಗಳು ಮತ್ತು ವಿನಿಯಮಗಳು;

(ಟಿ) "ಅಧ್ಯಯನ ಕೇಂದ್ರ" ಎಂದರೆ, ವಿದ್ಯಾರ್ಥಿಗಳಿಗೆ ಅಗತ್ಯವಾದ ಬುದ್ಧಿವಾದ, ಸಲಹೆಗಳನ್ನು ನೀಡುವ ಅಥವಾ ಇತರ ಯಾವುದೇ ನೆರವನ್ನು ನೀಡುವ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವು ರಾಜ್ಯದೊಳಗೆ ಸ್ಥಾಪಿಸಿ ಮತ್ತು ನಿರ್ವಹಿಸುತ್ತಿರುವ ಒಂದು ಕೇಂದ್ರ;

(ಯು) "ಅಧ್ಯಾಪಕರು" ಎಂದರೆ, ಒಬ್ಬ ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಒಂದು ಘಟಕ ಕಾಲೇಜಿನಲ್ಲಿ ಬೋಧಿಸುವುದಕ್ಕೆ ಅಥವಾ ಸಂಶೋಧನೆ ನಡೆಸುವುದಕ್ಕೆ ಅಥವಾ ಸಂಶೋಧನೆಗೆ ಮಾರ್ಗದರ್ಶನ ನೀಡುವುದಕ್ಕೆ ನೇಮಕವಾದ ಅಂಥ ಇತರ ವ್ಯಕ್ತಿ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗವು ನಿರ್ದಿಷ್ಟಪಡಿಸಿದ ಗುಣಮಟ್ಟಗಳಿಗೆ ಅನುಸಾರವಾಗಿ ಇರುವ ಘಟಕ ಕಾಲೇಜಿನ ಪ್ರಾಂಶುಪಾಲರು ಇದರಲ್ಲಿ ಒಳಗೊಳ್ಳುತ್ತಾರೆ;

(ವಿ) "ವಿಶ್ವವಿದ್ಯಾಲಯ" ಎಂದರೆ, ಈ ಅಧಿನಿಯಮದಡಿಯಲ್ಲಿ ಸ್ಥಾಪಿಸಿ ನಿಗಮಿತಗೊಳಿಸಲಾದ ಶ್ರೀ ಜಗದ್ಗುರು ಮುರುಘರಾಜೇಂದ್ರ ವಿಶ್ವವಿದ್ಯಾಲಯ;

(ಡಬ್ಲ್ಯೂ) "ವಿಶ್ವವಿದ್ಯಾಲಯ ಅನುದಾನಗಳ ಆಯೋಗ" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) 4ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ಆಯೋಗ; ಮತ್ತು

(ಎಕ್ಸ್) "ಸಂದರ್ಶಕರು" ಎಂದರೆ, 13ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ವಿಶ್ವವಿದ್ಯಾಲಯದ ಸಂದರ್ಶಕರು.

## ಅಧ್ಯಾಯ- II

## ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

3. **ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ.-** (1) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಹಕ್ಕನ್ನು ಪ್ರಾಯೋಜಕ ಟ್ರಸ್ಟ್ ಹೊಂದಿರತಕ್ಕದ್ದು.

(2) ಪ್ರಾಯೋಜಕ ಟ್ರಸ್ಟ್‌ನ ಮೂಲಕ ರಾಜ್ಯ ಸರ್ಕಾರಕ್ಕೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವವನ್ನು ಸಲ್ಲಿಸತಕ್ಕದ್ದು.

(3) ಪ್ರಸ್ತಾವವು ಈ ಮುಂದಿನ ವಿವರಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಪ್ರಾಯೋಜಕ ಟ್ರಸ್ಟ್‌ನ ವಿವರಗಳೊಂದಿಗೆ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು;

(ii) ವಿಶ್ವವಿದ್ಯಾಲಯದ ವ್ಯಾಪ್ತಿ ಮತ್ತು ಸ್ಥಾನಮಾನ ಹಾಗೂ ಭೂಮಿಯ ಲಭ್ಯತೆ;

(iii) ಪ್ರಾರಂಭದ ದಿನಾಂಕದಿಂದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳಬೇಕೆಂದಿರುವ ಅಧ್ಯಯನ ಮತ್ತು ಸಂಶೋಧನಾ ಕಾರ್ಯಕ್ರಮಗಳ ಸ್ವರೂಪ ಮತ್ತು ಬಗೆಗಳು;

(iv) ಪ್ರಾರಂಭಿಸಬೇಕೆಂದು ಪ್ರಸ್ತಾಪಿಸಿರುವ ವ್ಯಾಸಂಗ ವಿಭಾಗಗಳು (ಫ್ಯಾಕಲ್ಟಿಗಳು), ಅಧ್ಯಯನ ಕ್ರಮಗಳು ಮತ್ತು ಸಂಶೋಧನೆಗಳ ಸ್ವರೂಪ;

(v) ಕಟ್ಟಡಗಳು, ಸಲಕರಣೆಗಳು ಮತ್ತು ರಚನಾ ಸೌಕರ್ಯಗಳನ್ನು ಒದಗಿಸುವಂಥ ಕ್ಯಾಂಪಸ್ ಅಭಿವೃದ್ಧಿ;

(vi) ಪ್ರಾರಂಭದ ದಿನಾಂಕದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಗಾಗಿ ಬಂಡವಾಳ ವೆಚ್ಚದ ಹಂತಗಳು;

(vii) ಬಾಬುವಾರು ಆವರ್ತಕ ವೆಚ್ಚ, ಆರ್ಥಿಕ ಮೂಲಗಳು ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ತಗಲುವ ಅಂದಾಜು ವೆಚ್ಚ;

(viii) ಸಂಪನ್ಮೂಲ ಸಂಗ್ರಹಣೆಗಾಗಿ ಯೋಜನೆ ಮತ್ತು ಅದಕ್ಕೆ ಬಂಡವಾಳದಿಂದ ತಗಲುವ ವೆಚ್ಚ ಹಾಗೂ ಪ್ರತಿಯೊಂದು ಮೂಲಕ್ಕೂ ಮರು ಸಂದಾಯ ಮಾಡುವ ರೀತಿ;

(ix) ವಿದ್ಯಾರ್ಥಿಗಳಿಂದ ಶುಲ್ಕ ವಸೂಲು ಮಾಡಿ ಆಂತರಿಕವಾಗಿ ನಿಧಿ ಸಂಗ್ರಹಿಸುವ ಯೋಜನೆ, ಸಲಹಾ ಸೇವೆ ಮತ್ತು ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಿಗೆ ಸಂಬಂಧಿಸಿದ ಇತರ ಚಟುವಟಿಕೆಗಳಿಂದ ನಿರೀಕ್ಷಿತ ವರಮಾನಗಳು ಮತ್ತು ಇತರ ನಿರೀಕ್ಷಿತ ವರಮಾನಗಳು;

(x) ಘಟಕವೊಂದಕ್ಕೆ ತಗಲುವ ವೆಚ್ಚದ ವಿವರಗಳು, ಆರ್ಥಿಕವಾಗಿ ದುರ್ಬಲವಾದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕ, ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿ ವೇತನದಲ್ಲಿ ನೀಡುವ ರಿಯಾಯಿತಿ ಅಥವಾ ವಿನಾಯತಿಯ ಪರಿಮಿತಿಯ ವಿವರಗಳನ್ನು ಮತ್ತು ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳಿಗೆ ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳು ಪ್ರಾಯೋಜಿಸಿದ ವಿದ್ಯಾರ್ಥಿಗಳಿಗೆ ಮತ್ತು ಭಾರತವನ್ನುಳಿದು ಇತರ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ವಿಧಿಸತಕ್ಕ ಶುಲ್ಕದ ದರಗಳು ಬೇರೆ ಬೇರೆ ಇದ್ದಲ್ಲಿ ಅವುಗಳನ್ನು ಸೂಚಿಸುವ ಶುಲ್ಕ ರಚನೆಯ ವಿವರಗಳು;

(xi) ಸಂಬಂಧಪಟ್ಟ ವಿದ್ಯಾ ವಿಭಾಗದಲ್ಲಿ ಪ್ರಾಯೋಜಕ ಟ್ರಸ್ಟ್ ದೊರಕಿಸಿಕೊಡಲಿರುವ ವರ್ಷಗಳ ಅನುಭವ ಮತ್ತು ಪರಿಣಿತಿ ಹಾಗೆಯೇ ಅದರ ಹಣಕಾಸಿನ ಸಂಪನ್ಮೂಲಗಳು;

(xii) ವಿಶ್ವವಿದ್ಯಾಲಯದಲ್ಲಿರುವ ಅಧ್ಯಯನ ಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕಾಗಿ ಇರುವ ವ್ಯವಸ್ಥೆ; ಮತ್ತು

(xiii) ವಿಶ್ವವಿದ್ಯಾಲಯವು ಸ್ಥಾಪನೆಯಾಗುವುದಕ್ಕೆ ಮೊದಲು ನೆರವೇರಿಸಬೇಕೆಂದು ರಾಜ್ಯ ಸರ್ಕಾರವು ಈ ಅಧಿನಿಯಮದ ಅಡಿಯಲ್ಲಿ ಅಗತ್ಯಪಡಿಸಬಹುದಾದ ಅಂಥ ಇತರ ಷರತ್ತುಗಳ ನೆರವೇರಿಕೆಯ ಹಂತ.

(4) ಪ್ರಾಯೋಜಕ ಟ್ರಸ್ಟಿನಿಂದ ಸ್ವೀಕರಿಸಿದ ಪ್ರಸ್ತಾವಗಳನ್ನು ಪರೀಕ್ಷಿಸಲು ರಾಜ್ಯ ಸರ್ಕಾರವು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಪದನಿಮಿತ್ತ ಸದಸ್ಯರಾದ ಮೂರು ಸದಸ್ಯರುಗಳನ್ನು ಒಳಗೊಂಡ ಒಂದು ಶೋಧನಾ ಸಮಿತಿಯನ್ನು ರಚಿಸತಕ್ಕದ್ದು ಮತ್ತು ಅದು ವಿಶ್ವವಿದ್ಯಾಲಯದ ಸ್ಥಾಪನೆಗೆ ರಾಜ್ಯ ಸರ್ಕಾರಕ್ಕೆ ಶಿಫಾರಸ್ಸನ್ನು ಮಾಡತಕ್ಕದ್ದು.

4. **ವಿಶ್ವವಿದ್ಯಾಲಯದ ಸ್ಥಾಪನೆ.-** (1) ರಾಜ್ಯ ಸರ್ಕಾರವು ಶೋಧನಾ ಸಮಿತಿಯು ಮಾಡಿದ ಶಿಫಾರಸ್ಸುಗಳನ್ನು ಪರಿಶೀಲಿಸಿದ ತರುವಾಯ ಮತ್ತು ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ,-

(i) ಟ್ರಸ್ಟ್ ಸಾಕಷ್ಟು ಮೂಲ ಸೌಕರ್ಯದೊಂದಿಗೆ ವಿಶ್ವವಿದ್ಯಾಲಯವೊಂದನ್ನು ನಡೆಸಲು ಸಮರ್ಥವಾಗಿದೆ ಎಂದು ಅದು ಮನಗಂಡರೆ;

(ii) ಪ್ರದೇಶಕ್ಕನುಸಾರವಾಗಿ ಕೆಳಗೆ ನಿರ್ದಿಷ್ಟಪಡಿಸಿದ ವ್ಯಾಪ್ತಿಗೆ ಭೂಮಿಯ ಒಡೆತನವನ್ನು ಹೊಂದಿರತಕ್ಕದ್ದು, ಎಂದರೆ:-

(ಎ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯೊಳಗಿದ್ದರೆ ಇಪ್ಪತ್ತೈದು ಎಕರೆಗಳು;

(ಬಿ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯಿಂದ ಹೊರಗೆ ಇದ್ದು, ಆದರೆ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಪ್ರದೇಶದ ಒಳಗೆ ಇದ್ದರೆ ನಲವತ್ತು ಎಕರೆಗಳು;

(ಸಿ) ಭೂಮಿಯು (ಎ) ಮತ್ತು (ಬಿ) ಖಂಡಗಳಲ್ಲಿ ನಿರ್ದಿಷ್ಟಪಡಿಸಿದ ಸ್ಥಳಗಳನ್ನು

ಹೊರತುಪಡಿಸಿದ ಸ್ಥಳಗಳಿದ್ದರೆ ಐವತ್ತು ಎಕರೆಗಳಿಗಿಂತ ಕಡಿಮೆ ಇರತಕ್ಕದ್ದಲ್ಲ.

ಮೇಲೆ ನಿರ್ದಿಷ್ಟಪಡಿಸಿದ ಭೂಮಿಯು ಏಕ ಘಟಕ (ಸಿಂಗಲ್ ಬ್ಲಾಕ್) ದಲ್ಲಿರತಕ್ಕದ್ದು ಮತ್ತು ಇದು ಸಂಬಂಧಪಟ್ಟ ಟ್ರಸ್ಟ್ ಅಥವಾ ಸಂಸ್ಥೆ ಅಥವಾ ವಿಶ್ವವಿದ್ಯಾಲಯದ ಹೆಸರಿನಲ್ಲಿರತಕ್ಕದ್ದು. 3ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ಅಗತ್ಯಪಡಿಸಲಾದಂತೆ ಒದಗಿಸಿದ ವಿವರಗಳ ಆಧಾರದ ಮೇಲೆ ಸರ್ಕಾರವು 47ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಬೇಕೆಂದು ಟ್ರಸ್ಟ್‌ಗೆ ನಿರ್ದೇಶನ ನೀಡಬಹುದು.

(2) ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಸ್ಥಾಪನೆಯ ತರುವಾಯ, ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, "ಶ್ರೀ ಜಗದ್ಗುರು ಮುರುಘರಾಜೇಂದ್ರ ವಿಶ್ವವಿದ್ಯಾಲಯ" ಎಂಬ ಹೆಸರಿನ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ರಾಜ್ಯದಲ್ಲಿ ಸ್ಥಾಪಿಸುವುದಕ್ಕೆ ಮಂಜೂರಾತಿಯನ್ನು ನೀಡಬಹುದು.

(3) ವಿಶ್ವವಿದ್ಯಾಲಯದ ಕೇಂದ್ರ ಕಾರ್ಯಸ್ಥಾನವು ಚಿತ್ರದುರ್ಗದಲ್ಲಿ ಇರತಕ್ಕದ್ದು. ವಿಶ್ವವಿದ್ಯಾಲಯದ ಸ್ಥಾಪನೆಯ ಐದು ವರ್ಷಗಳ ತರುವಾಯ ವಿಶ್ವವಿದ್ಯಾಲಯವು ತನ್ನ ಕ್ಯಾಂಪಸ್ಸುಗಳನ್ನು ಅಥವಾ ಪ್ರಾದೇಶಿಕ ಕೇಂದ್ರಗಳನ್ನು, ಅಧ್ಯಯನ ಕೇಂದ್ರಗಳನ್ನು ಕರ್ನಾಟಕದ ಯಾವುದೇ ಭಾಗದಲ್ಲಿ ಹೊಂದಿರತಕ್ಕದ್ದು ಮತ್ತು ಆ ಬಗ್ಗೆ ರಾಜ್ಯ ಸರ್ಕಾರದ ಪೂರ್ವಾನುಮತಿಯನ್ನು ಪಡೆದುಕೊಳ್ಳುವುದಕ್ಕೊಳಪಟ್ಟು ಹಾಗೂ ವಿಶ್ವವಿದ್ಯಾಲಯ ಅನುದಾನಗಳ ಆಯೋಗದ ಗುಣಮಟ್ಟಗಳಿಗನುಸಾರವಾಗಿ ಹೊಂದಿರತಕ್ಕದ್ದು.

(4) ಮೊದಲ ಕುಲಾಧಿಪತಿಯವರು, ಮೊದಲ ಕುಲಪತಿಯವರು, ಪ್ರಬಂಧಕ ಮಂಡಳಿಯ ಮೊದಲ ಸದಸ್ಯರುಗಳು, ವ್ಯವಸ್ಥಾಪನಾ ಮಂಡಳಿಯ ಹಾಗೂ ಶೈಕ್ಷಣಿಕ ಪರಿಷತ್ತಿನ ಮೊದಲ ಸದಸ್ಯರುಗಳು ಮತ್ತು ಇನ್ನು ಮುಂದೆ, ಅಂಥ ಅಧಿಕಾರಿಗಳು ಅಥವಾ ಸದಸ್ಯರುಗಳಾಗಬಹುದಾದಂಥ ಎಲ್ಲಾ ವ್ಯಕ್ತಿಗಳು, ಅಂಥ ಪದ ಅಥವಾ ಸದಸ್ಯತ್ವವನ್ನು ಹೊಂದಿರುವುದು ಮುಂದುವರೆಯುವವರೆಗೆ, ಒಂದು ನಿಗಮಿತ ನಿಕಾಯವನ್ನು ರಚಿಸತಕ್ಕದ್ದು, ಮತ್ತು ಅದು ವಿಶ್ವವಿದ್ಯಾಲಯದ ಹೆಸರಿನಲ್ಲಿ ದಾವೆ ಹೂಡಬಹುದು ಮತ್ತು ದಾವೆಗೊಳಗಾಗಬಹುದು.

(5) (2)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಸ್ಥಾಪನೆಗೆ ಮಂಜೂರಾತಿಯಾದ ಮೇಲೆ, ವಿಶ್ವವಿದ್ಯಾಲಯದ ಉದ್ದೇಶಕ್ಕಾಗಿ, ಪ್ರಾಯೋಜಕ ಟ್ರಸ್ಟ್ ಆರ್ಜಿಸಿದ, ಸೃಜಿಸಿದ, ಏರ್ಪಾಟು ಮಾಡಿಕೊಂಡ ಅಥವಾ ಕಟ್ಟಲ್ಪಟ್ಟ ಭೂಮಿ ಮತ್ತು ಇತರ ಸ್ಥಿರ ಮತ್ತು ಚರ ಸ್ವತ್ತು, ವಿಶ್ವವಿದ್ಯಾಲಯದಲ್ಲಿ ನಿಹಿತವಾಗಿರತಕ್ಕದ್ದು.

(6) ವಿಶ್ವವಿದ್ಯಾಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದ ಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂಥ ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

(7) ವಿಶ್ವವಿದ್ಯಾಲಯದಲ್ಲಿನ ಭೂಮಿ. ಕಟ್ಟಡ ಮತ್ತು ಇತರ ಸ್ವತ್ತುಗಳನ್ನು ವಿಶ್ವವಿದ್ಯಾಲಯದ ಉದ್ದೇಶಗಳಿಗೆ ಆನುಷಂಗಿಕವಾಗಿರುವುದನ್ನು ಹೊರತುಪಡಿಸಿ ಇತರ ಯಾವುದೇ ಉದ್ದೇಶಕ್ಕಾಗಿ ಬಳಸತಕ್ಕದ್ದಲ್ಲ.

5. **ಅನುದಾನಗಳು ಮತ್ತು ಹಣಕಾಸು ನೆರವು**.- ವಿಶ್ವವಿದ್ಯಾಲಯವು ಸ್ವಂತ ಧನಮೂಲವುಳ್ಳ ಲಾಭರಹಿತ ಸಂಸ್ಥೆಯಾಗಿರತಕ್ಕದ್ದು, ರಾಜ್ಯದಿಂದ ಅಥವಾ ರಾಜ್ಯದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಇತರ ಸಂಸ್ಥೆ ಅಥವಾ ನಿಗಮದಿಂದ ಯಾವುದೇ ನಿರ್ವಹಣಾ ಸಹಾಯ ಅನುದಾನ ಅಥವಾ ಯಾವುದೇ ಹಣಕಾಸು ನೆರವನ್ನು ಹಕ್ಕಿನಿಂದ ಕೇಳತಕ್ಕದ್ದಲ್ಲ ಅಥವಾ ಅದನ್ನು ಪಡೆಯಲು ಹಕ್ಕನ್ನು ಹೊಂದಿರತಕ್ಕದ್ದಲ್ಲ:

ಪರಂತು, ರಾಜ್ಯವು.-

(ಎ) ಇತರ ರಾಜ್ಯ ಸರ್ಕಾರದ ಸಂಘಟನೆಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿರುವಂಥದ್ದೇ ಸಂಶೋಧನೆ. ಅಭಿವೃದ್ಧಿ ಮತ್ತಿತರ ಚಟುವಟಿಕೆಗಳಿಗಾಗಿ; ಅಥವಾ

(ಬಿ) ರಾಜ್ಯ ಸರ್ಕಾರದಿಂದ ನೆರವನ್ನು ಪಡೆಯುವ ಯಾವುದೇ ನಿರ್ದಿಷ್ಟ ಸಂಶೋಧನೆ ಅಥವಾ ಕಾರ್ಯಕ್ರಮಗಳಿಗಾಗಿ; ಮತ್ತು

(ಸಿ) ರಾಜ್ಯ ಕಾರ್ಯನೀತಿಯ ಬದಲಾವಣೆಗೆ ಒಳಪಟ್ಟು ಅಥವಾ ಅನ್ಯಥಾ ಇದೇ ಬಗೆಯ ವಿಶ್ವವಿದ್ಯಾಲಯಗಳಿಗೆ ಅವಕಾಶವನ್ನು ಕಲ್ಪಿಸುವುದಕ್ಕೆ ಅಥವಾ ಅವುಗಳ ಪ್ರಯೋಜನಕ್ಕಾಗಿ.

- ಅನುದಾನದ ಮೂಲಕ ಅಥವಾ ಅನ್ಯಥಾ ಹಣಕಾಸು ಬೆಂಬಲವನ್ನು ಒದಗಿಸಬಹುದು:

ಮತ್ತು ಪರಂತು, ವಿಶ್ವವಿದ್ಯಾಲಯವು, ಯಾವುದೇ ಇತರ ಮೂಲದಿಂದ ಯಾವುದೇ ಆರ್ಥಿಕ ನೆರವನ್ನು ಸ್ವೀಕರಿಸಬಹುದು.

6. **ಘಟಕ ಕಾಲೇಜು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಅಥವಾ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದಕ್ಕೆ ಅಧಿಕಾರ**.-ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಐದು ವರ್ಷಗಳನ್ನು ಪೂರ್ಣಗೊಳಿಸಿದ ನಂತರ, ವಿಶ್ವವಿದ್ಯಾಲಯ ಅನುದಾನ ಆಯೋಗದ ಮತ್ತು ಇತರ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ಗುಣಮಟ್ಟಗಳಿಗೆ ಒಳಪಟ್ಟು, ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ, ವಿಶ್ವವಿದ್ಯಾಲಯವು, ರಾಜ್ಯದಲ್ಲಿ ತನಗೆ ಸೂಕ್ತವೆನಿಸುವಂಥ ಸ್ಥಳಗಳಲ್ಲಿ ಘಟಕ ಕಾಲೇಜುಗಳು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದಿರಬಹುದು.

7. **ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು**.- ವಿಶ್ವವಿದ್ಯಾಲಯವು, ತನ್ನ ಭವಿಷ್ಯದ್‌ದೃಷ್ಟಿ ಮತ್ತು ಧ್ಯೇಯೋದ್ದೇಶಗಳನ್ನು ಸಾಧಿಸಲು ಈ ಮುಂದಿನಂತೆ ವಿವಿಧ ಬಗೆಯ ಕಾರ್ಯತಂತ್ರಗಳನ್ನು ಕೈಗೊಳ್ಳಬಹುದು:-

(i) ಸಾಮಾನ್ಯ, ತಾಂತ್ರಿಕ, ಆರೋಗ್ಯ, ವ್ಯವಸ್ಥಾಪನೆ, ಕಾನೂನು, ಜೀವ ವಿಜ್ಞಾನಗಳು ಮತ್ತು ಸಂಬಂಧಿತ ವಿಭಾಗದಲ್ಲಿ, ಸ್ನಾತಕೋತ್ತರ ಪದವಿ, ಡಾಕ್ಟೊರಲ್ ಮತ್ತು ಪೋಸ್ಟ್

ಡಾಕ್ಟೊರಲ್ ಕೋರ್ಸುಗಳಿಗೆ ಮುಂದುವರಿಯುವ ಮತ್ತು ಅವುಗಳನ್ನು ಒಳಗೊಳ್ಳುವ ವಿಶ್ವವಿದ್ಯಾಲಯ ಶಿಕ್ಷಣದಲ್ಲಿ ಪ್ರಗತಿಯನ್ನು ಮತ್ತು ಅನ್ವೇಷಣೆಯನ್ನು ಬೆಂಬಲಿಸುವುದು, ಪ್ರೋತ್ಸಾಹಿಸುವುದು ಮತ್ತು ಕೈಗೊಳ್ಳುವುದು ಹಾಗೂ ಈ ಕ್ಷೇತ್ರಗಳಲ್ಲಿ ಸಲಹೆಯನ್ನೂ ಒಳಗೊಂಡಂತೆ ಸಂಶೋಧನೆ, ಪ್ರಗತಿ ಮತ್ತು ಜ್ಞಾನ ಪ್ರಸಾರಕ್ಕೆ ಉಪಬಂಧಗಳನ್ನು ಕಲ್ಪಿಸುವುದು;

(ii) ವಿದ್ಯಾರ್ಥಿಗಳಿಗೆ, ಬೋಧಕ ವೃಂದದ (ಫ್ಯಾಕಲ್ಟಿ) ಸದಸ್ಯರಿಗೆ ಮತ್ತು ಇತರರಿಗೆ ನಿರ್ದಿಷ್ಟ ಶೈಕ್ಷಣಿಕ ಮತ್ತು ಸಂಶೋಧನಾ ಕಾರ್ಯಕ್ರಮಗಳನ್ನು, ತರಬೇತಿ ಕಾರ್ಯಕ್ರಮಗಳನ್ನು ಮತ್ತು ವಿನಿಮಯ ಕಾರ್ಯಕ್ರಮಗಳನ್ನು ಪರಿಕಲ್ಪಿಸಲು, ವಿನ್ಯಾಸಗೊಳಿಸಲು, ಅಭಿವೃದ್ಧಿಪಡಿಸಲು ಇತರ ಯಾವುದೇ ವಿಶ್ವವಿದ್ಯಾಲಯಗಳು, ಸಂಶೋಧನಾ ಸಂಸ್ಥೆಗಳು, ಲಾಭರಹಿತ ಸಂಸ್ಥೆಗಳು, ಕೈಗಾರಿಕಾ ಸಂಸ್ಥೆಗಳು, ವೃತ್ತಿಪರ ಸಂಸ್ಥೆಗಳು ಅಥವಾ ಇತರ ಸಂಸ್ಥೆಗಳೊಂದಿಗೆ ಸಹಯೋಗವನ್ನು ಹೊಂದುವುದು;

(iii) ರಾಜ್ಯ ಸರ್ಕಾರದ ಪೂರ್ವ ಅನುಮೋದನೆಯೊಡನೆ, ಯಾವುದೇ ಸಂಸ್ಥೆಯೊಂದಿಗೆ ಸಹಯೋಗ ಹೊಂದಿ ಸಂಶೋಧನೆಯನ್ನು ಮತ್ತು ಹೊಸತನವನ್ನು ಬೆಳಕಿಗೆ ತರುವುದು;

(iv) ತಾನು ಸೂಕ್ತವೆಂದು ಭಾವಿಸಬಹುದಾದಂತೆ, ಕಲಿಕೆಯ ಅಂಥ ಶಾಖೆಗಳಲ್ಲಿ ಬೋಧನಾ ಮತ್ತು ಸಂಶೋಧನಾ ಸೌಲಭ್ಯಗಳನ್ನು ಒದಗಿಸಿ ಜ್ಞಾನ ಪ್ರಸಾರ ಮಾಡುವುದು ಮತ್ತು ಅದನ್ನು ಮುಂದುವರೆಸುವುದು ಹಾಗೂ ವಿಶೇಷವಾಗಿ ತಂತ್ರಜ್ಞಾನ, ಆರೋಗ್ಯ, ನಿರ್ವಹಣೆ, ಜೀವವಿಜ್ಞಾನಗಳಿಗೆ ಸಂಬಂಧಿತ ಕೋರ್ಸುಗಳಲ್ಲಿ ಸಮಗ್ರ ವ್ಯಾಸಂಗ ವಿಷಯಗಳಿಗಾಗಿ ವಿಶೇಷ ಉಪಬಂಧ ಕಲ್ಪಿಸುವುದು ಮತ್ತು ವಿಶ್ವವಿದ್ಯಾಲಯದ ಅಂಥ ಇತರ ಉನ್ನತ ಶೈಕ್ಷಣಿಕ ಕಾರ್ಯಕ್ರಮಗಳಿಗಾಗಿ ಅಂತರವಿದ್ಯಾವಿಷಯಗಳ ಅಧ್ಯಯನ ಮತ್ತು ಸಂಶೋಧನೆಗೆ ಉತ್ತೇಜನ ನೀಡುವುದಕ್ಕೆ ಸೂಕ್ತ ಕ್ರಮ ಕೈಗೊಳ್ಳುವುದು;

(v) ಉನ್ನತ ತಾಂತ್ರಿಕ ಮತ್ತು ಇಂಜಿನಿಯರಿಂಗ್ ಪರಿಹಾರಗಳಿಗೆ ಭವಿಷ್ಯದ ಸಮರ್ಥನೀಯವಾದ ತಂತ್ರಜ್ಞಾನಗಳ ವ್ಯಾಪಾರದ ಕುರಿತಾದ ಸಂಶೋಧನೆಯ ಮೂಲಕ ವೃತ್ತಿಪರ ಕೈಗಾರಿಕಾ ಬೇಡಿಕೆಗಳನ್ನು ಪೂರೈಸುವುದಕ್ಕೆ ಮಾನವ ಸಂಪನ್ಮೂಲವನ್ನು ಅಭಿವೃದ್ಧಿಪಡಿಸುವುದು ಮತ್ತು ತಂತ್ರಜ್ಞಾನ ವ್ಯವಹಾರ ಮತ್ತು ತಂತ್ರಜ್ಞಾನವನ್ನು ಬೆಳೆಸಲು ಸಹಾಯಮಾಡುವುದು.

(vi) ಉನ್ನತ ಕಲಿಕೆಗೆ ಪ್ರವೇಶಾವಕಾಶಗಳನ್ನು ಮತ್ತು ನ್ಯಾಯಸಮ್ಮತತೆಗೆ ಉತ್ತೇಜನ ನೀಡುವ ದೃಷ್ಟಿಯಿಂದ, ಕಲಿಕೆಯ ವಿಧಾನಗಳು ಮತ್ತು ಸ್ಥಳಗಳು, ವ್ಯಾಸಂಗ ಕ್ರಮಗಳ ಸಂಯೋಜನೆ, ದಾಖಲಾತಿಗಾಗಿ ಅರ್ಹತೆ, ಪ್ರವೇಶದ ವಯಸ್ಸು, ಪರೀಕ್ಷೆಯನ್ನು ನಡೆಸುವುದು ಮತ್ತು ಕಾರ್ಯಕ್ರಮಗಳ ನಿರ್ವಹಣೆಗೆ ಸಂಬಂಧಿಸಿದಂತೆ ನಮ್ಯವಾದ (ಫ್ಲೆಕ್ಸಿಬಲ್) ಮತ್ತು ಮುಕ್ತವಾದ, ವಿಶ್ವವಿದ್ಯಾಲಯ ಮಟ್ಟದ ಶಿಕ್ಷಣದ ಅನ್ವೇಷಣಾ ಪದ್ಧತಿಯನ್ನು ಅಳವಡಿಸುವುದು ಹಾಗೂ ಜ್ಞಾನದ ಹೊಸ ಕ್ಷೇತ್ರಗಳಲ್ಲಿ ಉತ್ಕೃಷ್ಟತೆಗೆ ಪ್ರೋತ್ಸಾಹಿಸುವುದು, ಶೈಕ್ಷಣಿಕ ಮತ್ತು ಸಮನ್ವಯ ಕಲಿಕೆ, ಇವೆರಡಕ್ಕೂ ಸಮನಾದ ಪ್ರಾಮುಖ್ಯತೆಯನ್ನು ನೀಡುವುದು;

(vii) ಗುಣಮಟ್ಟದ ಶಿಕ್ಷಣಕ್ಕಾಗಿ ಕೊಡುಗೆಯನ್ನು ನೀಡಲು ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಸಂಪನ್ಮೂಲ ಕೇಂದ್ರಗಳನ್ನು ಅಭಿವೃದ್ಧಿಪಡಿಸುವುದು;

(viii) ವಿಶ್ವವಿದ್ಯಾಲಯದ ಸ್ಥಾಪನೆಯ ಐದು ವರ್ಷಗಳ ತರುವಾಯ ಕರ್ನಾಟಕದಲ್ಲಿ ವಿವಿಧ ಸ್ಥಳಗಳಲ್ಲಿ ಕ್ಯಾಂಪಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳು ಮತ್ತು ಘಟಕ ಕಾಲೇಜುಗಳನ್ನು ಸ್ಥಾಪಿಸುವುದು ಮತ್ತು ತಾಂತ್ರಿಕತೆ, ವೃತ್ತಿಪರತೆ, ಸಾಮಾನ್ಯ ಶಿಕ್ಷಣ ಮತ್ತು ಸಮಾಜ ಮತ್ತು ಮಾನವ ಅಭಿವೃದ್ಧಿಯಲ್ಲಿ ಶೈಕ್ಷಣಿಕ ಬದಲಾವಣೆಗೆ ರಾಜ್ಯ ಸರ್ಕಾರದ

ಪೂರ್ವಾನುಮೋದನೆಯೊಂದಿಗೆ ಕೊಡುಗೆ ನೀಡುವುದು ಮತ್ತು ಜ್ಞಾನವನ್ನು ಅಭಿವೃದ್ಧಿಪಡಿಸುವುದು;

(ix) ಮೌಲ್ಯಮಾಪನದ ವಿವಿಧ ಆಧುನಿಕ ವಿಧಾನಗಳ ಮೂಲಕ ಮಾಡಿದ ಮೌಲ್ಯಮಾಪನಕ್ಕೆ ಅನುಸಾರವಾಗಿ ಶಿಕ್ಷಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದುದರ ಆಧಾರದ ಮೇಲೆ ನೀಡಲು ಪದವಿಗಳನ್ನು, ಡಿಪ್ಲೋಮೋಗಳನ್ನು, ಪ್ರಮಾಣಪತ್ರಗಳನ್ನು ಮತ್ತು ಯಶೋಪತ್ರ ಪ್ರದಾನದಂಥ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(x) ಉಪನ್ಯಾಸ ಮಾಲಿಕೆಗಳು, ವಿಚಾರ ಸಂಕಿರಣಗಳು, ಸಮ್ಮೇಳನಗಳು, ಕಾರ್ಯಾಂಗ ಶಿಕ್ಷಣ ಕಾರ್ಯಕ್ರಮಗಳು, ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳು, ಪ್ರಕಟಣೆಗಳು ಮತ್ತು ತರಬೇತಿ ಕಾರ್ಯಕ್ರಮಗಳು ಮತ್ತು ಕಾರ್ಯಸೂಚಿಗಳ ಮೂಲಕ ಜ್ಞಾನ ಪ್ರಸಾರ ಮಾಡುವುದು ಮತ್ತು ಶಿಕ್ಷಣ ಮತ್ತು ತತ್ಸಂಬಂಧಿತ ಅಭಿವೃದ್ಧಿ ಕ್ಷೇತ್ರಗಳ ವಿಷಯಗಳ ಬಗ್ಗೆ ಸಾರ್ವಜನಿಕ ಚರ್ಚೆಯನ್ನು ಏರ್ಪಡಿಸುವುದು;

(xi) ರಾಜ್ಯ ಸರ್ಕಾರದ ಪೂರ್ವ ಅನುಮತಿಯೊಂದಿಗೆ, ಉತ್ತಮ ಗುಣಮಟ್ಟದ ಇತರ ಯಾವುವೇ ವಿಶ್ವವಿದ್ಯಾಲಯಗಳೊಂದಿಗೆ ಸಹಭಾಗಿಗಳಾಗಿ ವಿಶ್ವವಿದ್ಯಾಲಯದ ಬೋಧಕ ವೃಂದ (ಫ್ಯಾಕಲ್ಟಿ) ಮತ್ತು ಸಂಶೋಧಕರ ಅಭಿವೃದ್ಧಿ ಮತ್ತು ತರಬೇತಿಗಾಗಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು;

(xii) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದಕ್ಕಾಗಿ ಮತ್ತು ಉತ್ತೇಜಿಸುವುದಕ್ಕಾಗಿ ಅವಶ್ಯಕವಾದ ಮತ್ತು ಯುಕ್ತವಾದ ಕ್ರಮಗಳನ್ನು ಕೈಗೊಳ್ಳುವುದು; ಮತ್ತು

(xiii) ಭಾರತದಲ್ಲಿ ಶಿಕ್ಷಣ ಮತ್ತು ಇತರ ಅಭಿವೃದ್ಧಿ ವಲಯಗಳನ್ನು ವಿಸ್ತರಿಸುವುದಕ್ಕಾಗಿ ಸರ್ಕಾರವು ಅನುಮೋದಿಸಬಹುದಾದಂತೆ ಯಾವುವೇ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದು.

8. **ವಿಶ್ವವಿದ್ಯಾಲಯದ ಅಧಿಕಾರಗಳು**:- ವಿಶ್ವವಿದ್ಯಾಲಯವು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗೆ ಅನುಸಾರವಾಗಿ ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿರ್ಧರಿಸಬಹುದಾದಂತೆ ವಿಶ್ವವಿದ್ಯಾಲಯದ ಸ್ಥಾಪನೆಯ ದಿನಾಂಕದಿಂದ ಐದು ವರ್ಷಗಳ ತರುವಾಯ ಕ್ಯಾಂಪಸ್ಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಕರ್ನಾಟಕದಲ್ಲಿ ಸ್ಥಾಪಿಸುವುದು ಮತ್ತು ನಿರ್ವಹಿಸುವುದು;

(ii) ವಿಶ್ವವಿದ್ಯಾಲಯದ ಉದ್ದೇಶವನ್ನು ಕಾರ್ಯರೂಪಕ್ಕೆ ತರುವಲ್ಲಿ ಅಗತ್ಯವಾಗಬಹುದಾದ ಅಥವಾ ಕಾರ್ಯಸಾಧ್ಯವಾಗಬಹುದಾದ ಎಲ್ಲಾ ಅಂಥ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು;

(iii) ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಮತ್ತು ಷರತ್ತುಗಳಿಗೊಳಪಟ್ಟು ಪದವಿಗಳು ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರದಾನಮಾಡುವುದು;

(iv) ಪರಿನಿಯಮಗಳನ್ವಯ ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿ ವೇತನಗಳು ಮತ್ತು ಬಹುಮಾನಗಳು, ಅವಾರ್ಡುಗಳು, ಪಾರಿತೋಷಕಗಳು ಇತ್ಯಾದಿಗಳನ್ನು ಸ್ಥಾಪಿಸುವುದು ಮತ್ತು ನೀಡುವುದು;

(v) ಪರಿನಿಯಮಗಳಲ್ಲಿ ಅಥವಾ ಸಂದರ್ಭಾನುಸಾರವಾಗಿ ನಿಯಮಗಳಲ್ಲಿ ನಿಗದಿಪಡಿಸಬಹುದಾದ ಅಂಥ ಶುಲ್ಕಗಳು, ಬಿಲ್ಲುಗಳು, ಖರೀದಿ ಪಟ್ಟಿಗಳನ್ನು ಕೇಳಿಪಡೆದುಕೊಳ್ಳುವುದು ಮತ್ತು ಸ್ವೀಕರಿಸುವುದು ಹಾಗೂ ಚಾರ್ಜುಗಳನ್ನು ವಸೂಲು ಮಾಡುವುದು;

(vi) ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಪಠ್ಯೇತರ ಚಟುವಟಿಕೆಗಳಿಗೆ ಅವಕಾಶಗಳನ್ನು ಕಲ್ಪಿಸುವುದು;

(vii) ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಕ್ಯಾಂಪಸುಗಳ, ಪ್ರಾದೇಶಿಕ ಕೇಂದ್ರಗಳ, ಅಧ್ಯಯನ ಕೇಂದ್ರಗಳ ಫ್ಯಾಕಲ್ಟಿ, ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವುದು;

(viii) ವಿಶ್ವವಿದ್ಯಾಲಯದ ಅಥವಾ ಒಂದು ಘಟಕ ಕಾಲೇಜಿನ ಅಥವಾ ಕ್ಯಾಂಪಸ್ಸಿನ, ಪ್ರಾದೇಶಿಕ ಕೇಂದ್ರದ ಮತ್ತು ಅಧ್ಯಯನ ಕೇಂದ್ರದ ಉದ್ದೇಶಕ್ಕಾಗಿ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದಿರುವ, ಯಾವುದೇ ರೀತಿಯ ಸ್ವಯಂ ದೇಣಿಗೆಗಳು ಮತ್ತು ಕೊಡುಗೆಗಳನ್ನು ಸ್ವೀಕರಿಸುವುದು ಮತ್ತು ನ್ಯಾಸ ಮತ್ತು ದತ್ತಿ ಸ್ವತ್ತುಗಳೂ ಸೇರಿದಂತೆ ಯಾವುದೇ ಚರ ಅಥವಾ ಸ್ಥಿರ ಸ್ವತ್ತನ್ನು ಆರ್ಜಿಸುವುದು, ಹೊಂದಿರುವುದು, ನಿರ್ವಹಿಸುವುದು, ನಡೆಸುವುದು ಮತ್ತು ಹಸ್ತಾಂತರ ಮಾಡುವುದು;

(ix) ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸಿಕೊಂಡು ಬರುವುದು ಹಾಗೂ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ ವಿದ್ಯಾರ್ಥಿಗಳಿಗೆ ವಸತಿ ಸ್ಥಳಗಳಾಗಿ ಮಾನ್ಯತೆ ನೀಡುವುದು;

(x) ವಸತಿಯ ಮೇಲ್ವಿಚಾರಣೆ ಮಾಡುವುದು ಮತ್ತು ನಿಯಂತ್ರಣ ಮಾಡುವುದು ಹಾಗೂ ವಿದ್ಯಾರ್ಥಿಗಳು ಮತ್ತು ಎಲ್ಲಾ ಪ್ರವರ್ಗಗಳ ಸಿಬ್ಬಂದಿಗಳಲ್ಲಿ ಶಿಸ್ತು ನಿಯಂತ್ರಣ ಮಾಡುವುದು ಮತ್ತು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ನಡತೆ ಸಂಹಿತೆಯನ್ನು ರೂಪಿಸುವುದೂ ಒಳಗೊಂಡಂತೆ, ಅಂಥ ಸಿಬ್ಬಂದಿಗಳ ಸೇವಾಷರತ್ತುಗಳನ್ನು ನಿರೂಪಿಸುವುದು;

(xi) ಶೈಕ್ಷಣಿಕ, ಆಡಳಿತಾತ್ಮಕ ಮತ್ತು ಬೆಂಬಲ ಸಿಬ್ಬಂದಿಯ ಹುದ್ದೆಗಳನ್ನು ಮತ್ತು ಇತರ ಅವಶ್ಯ ಹುದ್ದೆಗಳನ್ನು ಸೃಜಿಸುವುದು;

(xii) ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ಉದ್ದೇಶಗಳಿಗಾಗಿ ಇತರ ವಿಶ್ವವಿದ್ಯಾಲಯಗಳೊಡನೆ ಸಹಕರಿಸುವುದು ಮತ್ತು ಸಹಯೋಗ ಹೊಂದುವುದು;

(xiii) ಶಿಕ್ಷಕರಿಗೆ, ಪಾಠಗಳನ್ನು ರಚಿಸುವವರಿಗೆ, ಮೌಲ್ಯಮಾಪಕರಿಗೆ ಮತ್ತಿತರ ಶೈಕ್ಷಣಿಕ ಸಿಬ್ಬಂದಿಗೆ ಪುನರ್ಮನನ ವ್ಯಾಸಂಗಕ್ರಮಗಳು, ಅಭಿಮುಖ ವ್ಯಾಸಂಗ ಕ್ರಮಗಳು, ಕಾರ್ಯಾಗಾರಗಳು, ವಿಚಾರಗೋಷ್ಠಿಗಳು ಮತ್ತಿತರ ಕಾರ್ಯಕ್ರಮಗಳನ್ನು ಏರ್ಪಡಿಸುವುದು ಮತ್ತು ನಡೆಸುವುದು;

(xiv) ಶೈಕ್ಷಣಿಕ ಪರಿಷತ್ತಿನ ಅನುಮೋದನೆಯೊಂದಿಗೆ ವಿಶ್ವವಿದ್ಯಾಲಯಕ್ಕೆ ಅಥವಾ ಘಟಕ ಕಾಲೇಜಿಗೆ, ಪ್ರಾದೇಶಿಕ ಕೇಂದ್ರಗಳಿಗೆ, ಅಧ್ಯಯನ ಕೇಂದ್ರಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮತ್ತು ಈ ಅಧಿನಿಯಮದಲ್ಲಿ ಕಲ್ಪಿಸಿದ ವ್ಯಾಪ್ತಿಗಿಂತ ಕಡಿಮೆಯಿಲ್ಲದಂತೆ ಕರ್ನಾಟಕದ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮಾನಕ ಗುಣಮಟ್ಟಗಳನ್ನು ನಿರ್ಧರಿಸುವುದು;

(xv) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಕಾರ್ಯರೂಪಕ್ಕೆ ತರಲು ಅವಶ್ಯವಾಗಬಹುದಾದಂಥ ಇತರ ಎಲ್ಲಾ ಕ್ರಮಗಳನ್ನು ಅಥವಾ ಕಾರ್ಯಗಳನ್ನು. ಅವು ಮೇಲೆ ಹೇಳಿದ ಅಧಿಕಾರಗಳಿಗೆ ಪ್ರಾಸಂಗಿಕವಾಗಿರಲಿ ಅಥವಾ ಇಲ್ಲದಿರಲಿ. ಕೈಗೊಳ್ಳುವುದು;

(xvi) ಪರೀಕ್ಷೆಗಳ ಆಧಾರದ ಮೇಲೆ ಅಥವಾ ಸರ್ಕಾರದಿಂದ ಅನುಮೋದಿತವಾದ ಇತರ ಯಾವುದೇ ಮೌಲ್ಯಮಾಪನ ವಿಧಾನದ ಆಧಾರದ ಮೇಲೆ ನೀಡಲು, ಪದವಿಗಳು. ಡಿಪ್ಲೋಮಾಗಳು. ಪ್ರಮಾಣಪತ್ರಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಸ್ಥಾಪಿಸುವುದು;

(xvii) ಫಿಲಂಗಳು. ಕ್ಯಾಸೆಟ್‌ಗಳು. ಧ್ವನಿಸುರುಳಿಗಳು. ದೃಶ್ಯಸುರುಳಿಗಳು. ಸಿ.ಡಿ.. ವಿ.ಸಿ.ಡಿ. ಮತ್ತು ಇತರ ತಂತ್ರಾಂಶಗಳೂ ಹಾಗೂ ಇತರ ಸಂಬಂಧಿತ ವಿದ್ಯುನ್ಮಾನ ಮತ್ತು ಮುದ್ರಣ ಮಾಧ್ಯಮ ಸೇರಿದಂತೆ ಬೋಧಕ ಸಾಮಗ್ರಿಗಳನ್ನು ತಯಾರಿಸುವುದಕ್ಕಾಗಿ ಅವಕಾಶ ಕಲ್ಪಿಸುವುದು;

(xviii) ಪ್ರಬಂಧಕ ಮಂಡಳಿಯ ಅನುಮೋದನೆಯೊಡನೆ ವಿಶ್ವವಿದ್ಯಾಲಯದ ಉದ್ದೇಶಗಳಿಗಾಗಿ ವಿಶ್ವವಿದ್ಯಾಲಯದ ಸ್ವತ್ತುಗಳನ್ನು ಭದ್ರತೆಯಾಗಿ ನೀಡಿ ಅಥವಾ ನೀಡದೆ ಹಣವನ್ನು ಪಡೆಯುವುದು. ಸಂಗ್ರಹಿಸುವುದು. ಚಂದಾದಾರರಾಗುವುದು ಮತ್ತು ಸಾಲ ಪಡೆಯುವುದು;

(xix) ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುದೇ ಇತರ ಶೈಕ್ಷಣಿಕ ಸಂಸ್ಥೆಗಳ ಆಡಳಿತವನ್ನು ವಶಪಡಿಸಿಕೊಳ್ಳುವುದು. ವಹಿಸಿಕೊಳ್ಳುವುದು ಮತ್ತು ನಡೆಸುವುದು;

(xx) ವ್ಯವಸ್ಥಾಪನಾ ಮಂಡಳಿಯ ಪೂರ್ವಾನುಮೋದನೆಯೊಂದಿಗೆ ಸ್ವತ್ತುಗಳನ್ನು ಆರ್ಜಿಸುವುದು; ಮತ್ತು

(xxi) ವಿಶ್ವವಿದ್ಯಾಲಯದ ಮೇಲಿನ ಉದ್ದೇಶಗಳಿಗೆ ಸಂಬಂಧಿಸಿದ ಅಥವಾ ಪ್ರಾಸಂಗಿಕವಾದ ಯಾವುದೇ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು.

9. **ವಿಶ್ವವಿದ್ಯಾಲಯವು ಎಲ್ಲಾ ವರ್ಗ. ಜಾತಿ. ಮತ. ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲರಿಗೂ ಮುಕ್ತವಾಗಿರತಕ್ಕದ್ದು.-** ವಿಶ್ವವಿದ್ಯಾಲಯದ ಪ್ರವೇಶಗಳು ವರ್ಗ. ಜಾತಿ. ಮತ. ಲಿಂಗ ಅಥವಾ ರಾಷ್ಟ್ರ ಭೇದವಿಲ್ಲದೆ ಎಲ್ಲಾ ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು. ಎಲ್ಲಾ ಪ್ರವೇಶಗಳನ್ನು ಅರ್ಹತಾ ಪರೀಕ್ಷೆಗಳಲ್ಲಿನ ಅರ್ಹತೆಯ ಆಧಾರದ ಮೇಲೆ ಮಾಡತಕ್ಕದ್ದು:

ಪರಂತು. ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳ ಪ್ರವೇಶದಲ್ಲಿ ಶೇಕಡಾ ನಲವತ್ತರಷ್ಟನ್ನು ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ಮೀಸಲಿಡತಕ್ಕದ್ದು ಮತ್ತು ಪ್ರವೇಶಗಳನ್ನು ರಾಜ್ಯ ಸರ್ಕಾರವು ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡತಕ್ಕದ್ದು ಮತ್ತು ಸೀಟುಗಳನ್ನು ಅರ್ಹತ ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ರೂಪಿಸುವ ಮೀಸಲಾತಿ ನೀತಿಗೆ ಅನುಸಾರವಾಗಿ ಹಂಚಿಕೆ ಮಾಡತಕ್ಕದ್ದು:

ಮತ್ತು ಪರಂತು. ಯಾವುದೇ ಕೋರ್ಸಿನಲ್ಲಿ ಹತ್ತಕ್ಕಿಂತ ಕಡಿಮೆ ಸೀಟುಗಳು ಇರುವಲ್ಲಿ. ಸ್ನಾತಕೋತ್ತರ ಇಂಥ ಕೋರ್ಸುಗಳನ್ನು ಒಟ್ಟಿಗೆ ಒಂದುಗೂಡಿಸುವ ಮೂಲಕ ಮೀಸಲಿಡತಕ್ಕದ್ದು ಮತ್ತು ಯಾವುದೇ ಕೋರ್ಸಿನಲ್ಲಿ ಮೂರು ಸೀಟುಗಳಿಗಿಂತ ಕಡಿಮೆ ಇರುವಲ್ಲಿ. ಅವುಗಳನ್ನು ಸರದಿ ಸುತ್ತಿನಲ್ಲಿ ಮೀಸಲಿಡತಕ್ಕದ್ದು.

10. **ರಾಷ್ಟ್ರೀಯ ಅಧಿಮಾನ್ಯತೆ.-** ವಿಶ್ವವಿದ್ಯಾಲಯವು ಪ್ರಾರಂಭವಾದ ತರುವಾಯ ಆದಷ್ಟು ಬೇಗನೆ ಸಂಬಂಧಪಟ್ಟ ಶಾಸನಾತ್ಮಕ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳಿಂದ ಅಧಿಮಾನ್ಯತೆಯನ್ನು ಕೋರತಕ್ಕದ್ದು ಮತ್ತು ಖಾಸಗಿ ವಿಶ್ವವಿದ್ಯಾಲಯಗಳು ನಡೆಸುವ ಎಲ್ಲಾ

ವ್ಯಾಸಂಗ ಕ್ರಮಗಳು ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ವಿನಿಯಮಗಳಿಗೆ ಅನುಸಾರವಾಗಿ ಇರತಕ್ಕದ್ದು.

11. **ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು**.- ಪ್ರಾಯೋಜಕ ಸಂಸ್ಥೆಯು ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದಂತೆ ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು. ಇವುಗಳಲ್ಲಿ ಪ್ರತಿಯೊಂದನ್ನು ಪ್ರಾಯೋಜಕ ಸಂಸ್ಥೆಯು ತನ್ನ ವಿವೇಚನಾನುಸಾರ ಚಲಾಯಿಸಬಹುದು, ಎಂದರೆ:-

(i) ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಪುನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(ii) ವಿಶ್ವವಿದ್ಯಾಲಯದ ಪ್ರಥಮ ಪ್ರಬಂಧಕ ಮಂಡಳಿಯನ್ನು ರಚಿಸುವುದು;

(iii) ಪ್ರಬಂಧಕ ಮಂಡಳಿಯ ಅಧ್ಯಕ್ಷರನ್ನು ನಾಮನಿರ್ದೇಶಿಸುವುದು;

(iv) ಪ್ರಬಂಧಕ ಮಂಡಳಿಯ ಸದಸ್ಯರಾಗಿ ಮೂರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(v) ವ್ಯವಸ್ಥಾಪನಾ ಮಂಡಳಿಯ ಸದಸ್ಯರಾಗಿ ಇಬ್ಬರು ವ್ಯಕ್ತಿಗಳನ್ನು ನಾಮ ನಿರ್ದೇಶಿಸುವುದು;

(vi) ವಿಶ್ವವಿದ್ಯಾಲಯದ ದತ್ತಿ ನಿಧಿಗೆ ದೇಣಿಗೆ ನೀಡಲು ನಿಧಿ ಮೂಲಗಳನ್ನು ನಿರ್ಧರಿಸುವುದು;

(vii) ವಿಶ್ವವಿದ್ಯಾಲಯದ ಹಣದ ವಿನಿಯೋಗ ಮತ್ತು ವೆಚ್ಚ ಮಾಡುವುದನ್ನು ನಿರ್ಧರಿಸುವುದು;

(viii) ಈ ಅಧಿನಿಯಮದಲ್ಲಿ ಉಪಬಂಧಿಸಿರುವ ವಿಧಾನದಲ್ಲಿ ಪ್ರಬಂಧಕ ಮಂಡಳಿಯ ಸಭೆಯಲ್ಲಿಯ ವಿವಾದಗಳನ್ನು ಬಗೆಹರಿಸುವುದು.

## ಅಧ್ಯಾಯ - III
## ವಿಶ್ವವಿದ್ಯಾಲಯದ ಅಧಿಕಾರಿಗಳು

12. **ವಿಶ್ವವಿದ್ಯಾಲಯದ ಅಧಿಕಾರಿಗಳು**.- ಈ ಮುಂದಿನವರು ವಿಶ್ವವಿದ್ಯಾಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:-

(i) ಸಂದರ್ಶಕರು;

(ii) ಸಹ-ಸಂದರ್ಶಕರು;

(iii) ಕುಲಾಧಿಪತಿಗಳು;

(iv) ಕುಲಪತಿಗಳು;

(v) ಸಹಕುಲಪತಿಗಳು;

(vi) ಕುಲಸಚಿವರು;

(vii) ಹಣಕಾಸು ಅಧಿಕಾರಿ; ಮತ್ತು

(viii) ಪರಿನಿಯಮಗಳ ಮೂಲಕ ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಘೋಷಿಸಬಹುದಾದಂಥ ಇತರ ಅಧಿಕಾರಿಗಳು.

13. **ಸಂದರ್ಶಕರು.**- (1) ಕರ್ನಾಟಕದ ಘನತೆವೆತ್ತ ರಾಜ್ಯಪಾಲರು ವಿಶ್ವವಿದ್ಯಾಲಯದ ಸಂದರ್ಶಕರಾಗಿರತಕ್ಕದ್ದು ಮತ್ತು ಸಂದರ್ಶಕರು ವಿಶ್ವವಿದ್ಯಾಲಯದ ಕಾರ್ಯನಿರ್ವಹಣೆಯ ಸುಧಾರಣೆಗಾಗಿ ಸಲಹೆಗಳನ್ನು ನೀಡಬಹುದು.

(2) ಸಂದರ್ಶಕರು, ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಸಂದರ್ಶಕರು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ವ್ಯವಹಾರಗಳಿಗೆ ಸಂಬಂಧಿಸಿದಂತೆ, ಯಾವುದೇ ಪತ್ರ ಅಥವಾ ಮಾಹಿತಿಯನ್ನು ತರಿಸಿಕೊಳ್ಳುವುದು.

(ii) ಸಂದರ್ಶಕರು, ಅವರು ಸ್ವೀಕರಿಸಿದ ಮಾಹಿತಿಯ ಆಧಾರದ ಮೇಲೆ ವಿಶ್ವವಿದ್ಯಾಲಯಗಳ ಯಾವುದೇ ಪ್ರಾಧಿಕಾರವು ಮಾಡಿದ ಯಾವುದೇ ಆದೇಶ, ನಡೆಸಿದ ವ್ಯವಹರಣೆಗಳು ಅಥವಾ ಕೈಗೊಂಡ ತೀರ್ಮಾನಗಳು, ಈ ಅಧಿನಿಯಮ, ವಿನಿಯಮಗಳು ಅಥವಾ ನಿಯಮಗಳಿಗೆ ಪೂರಕವಾಗಿಲ್ಲವೆಂದು ಮನಗಂಡರೆ ಅವರು ವಿಶ್ವವಿದ್ಯಾಲಯದ ಹಿತಾಸಕ್ತಿಯಿಂದ ತಾವು ಸೂಕ್ತವೆಂದು ಭಾವಿಸಬಹುದಾದಂಥ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಹಾಗೆ ಹೊರಡಿಸಿದ ನಿರ್ದೇಶನಗಳನ್ನು ಸಂಬಂಧಪಟ್ಟವರೆಲ್ಲರೂ ಪಾಲಿಸತಕ್ಕದ್ದು.

14. **ಸಹ-ಸಂದರ್ಶಕರು.**- (1) ಕರ್ನಾಟಕ ಸರ್ಕಾರದ ಮಾನ್ಯ ಉನ್ನತ ಶಿಕ್ಷಣ ಸಚಿವರು ವಿಶ್ವವಿದ್ಯಾಲಯದ ಸಹ-ಸಂದರ್ಶಕರಾಗಿರತಕ್ಕದ್ದು.

(2) ಸಂದರ್ಶಕರ ಅನುಪಸ್ಥಿತಿಯಲ್ಲಿ ಸಹ-ಸಂದರ್ಶಕರು ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

15. **ಕುಲಾಧಿಪತಿಗಳು.**- (1) ಕುಲಾಧಿಪತಿಯವರನ್ನು ಪ್ರಾಯೋಜಕ ಸಂಸ್ಥೆಯು ನೇಮಿಸತಕ್ಕದ್ದು.

(2) ಪ್ರಾಯೋಜಕ ಸಂಸ್ಥೆಯ ಪ್ರಸ್ತುತ ಅಧ್ಯಕ್ಷರು ಮೊದಲನೇ ಕುಲಾಧಿಪತಿಗಳಾಗಿರತಕ್ಕದ್ದು. ಅವರು ತಮ್ಮ ಜೀವನಪರ್ಯಂತ ಅಥವಾ ಅವರು ತಮ್ಮ ಪದವನ್ನು ಬಿಟ್ಟುಕೊಡುವವರೆಗೆ ಕುಲಾಧಿಪತಿಗಳಾಗಿ ಪದಧಾರಣ ಮಾಡಿರತಕ್ಕದ್ದು.

(3) ತದನಂತರದ ಕುಲಾಧಿಪತಿಗಳು, ಅಂಥ ನೇಮಕಾತಿಯನ್ನು ಪರಿಗಣಿಸುವ ಸಂದರ್ಭದಲ್ಲಿ ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ, ಪ್ರಾಯೋಜಕ ಸಂಸ್ಥೆಯ ನ್ಯಾಸಧಾರಿಯಾಗಿರತಕ್ಕದ್ದು ಅಥವಾ ಶಿಕ್ಷಣ, ವಿಜ್ಞಾನ, ಸಂಸ್ಕೃತಿ ಅಥವಾ ಸಾರ್ವಜನಿಕ ಜೀವನ ಕ್ಷೇತ್ರಗಳಲ್ಲಿ ರಾಷ್ಟ್ರೀಯ ಮಟ್ಟದ ಛಾಪನ್ನು ಪಡೆದಿರುವ ಅಂಥ ಇತರ ವ್ಯಕ್ತಿಯಾಗಿರತಕ್ಕದ್ದು.

(4) ಹಾಗೆ ನೇಮಕಗೊಂಡ ತದನಂತರದ ಕುಲಾಧಿಪತಿಗಳು ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ಪದಧಾರಣ ಮಾಡತಕ್ಕದ್ದು.

(5) ಕುಲಾಧಿಪತಿಗಳು ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳ ಅಡಿಯಲ್ಲಿ ಅವರಿಗೆ ಪ್ರದಾನ ಮಾಡಬಹುದಾದಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು. ಅವುಗಳಲ್ಲಿ ಈ ಮುಂದಿನ ಅಧಿಕಾರಗಳು ಒಳಗೊಂಡಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುವುದು;

(ii) ಸಂದರ್ಶಕರ ಮತ್ತು ಸಹ-ಸಂದರ್ಶಕರಿಬ್ಬರ ಗೈರುಹಾಜರಿಯಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಘಟಿಕೋತ್ಸವಗಳಲ್ಲಿ ಅಧ್ಯಕ್ಷತೆಯನ್ನು ವಹಿಸುವುದು;

(iii) ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವುದು;

(iv) ಈ ಅಧಿನಿಯಮ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಅನುಸಾರವಾಗಿ ಕುಲಪತಿಗಳನ್ನು ನೇಮಿಸುವುದು ಅಥವಾ ಪುನರ್ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(v) ಈ ಅಧಿನಿಯಮದ 16ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ನಾಮನಿರ್ದೇಶಕ ಸಮಿತಿಯ ಸದಸ್ಯರಾಗಿ ಒಬ್ಬ ವ್ಯಕ್ತಿಯನ್ನು ನಾಮನಿರ್ದೇಶನ ಮಾಡುವುದು;

(vi) ಸಹಕುಲಪತಿಗಳು, ಡೀನ್, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿಗಳ ನೇಮಕಾತಿಯನ್ನು ಪೂರ್ವಾನುಮೋದಿಸುವುದು;

(vii) ಮೊದಲ ಸಹಕುಲಪತಿಗಳು ಮತ್ತು ಹಣಕಾಸು ಅಧಿಕಾರಿಯನ್ನು ನೇಮಿಸುವುದು;

(viii) ಮೊದಲ ವ್ಯವಸ್ಥಾಪನಾ ಮಂಡಳಿ, ಹಣಕಾಸು ಸಮಿತಿ, ಸಂಶೋಧನಾ ಪರಿಷತ್ತು ಹಾಗೂ ಶೈಕ್ಷಣಿಕ ಪರಿಷತ್ತುಗಳನ್ನು ರಚಿಸುವುದು;

(ix) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ ಕಾರ್ಯಸೂಚಿ ವಿಷಯಗಳನ್ನು ಪೂರ್ವಾನುಮೋದಿಸುವುದು; ಮತ್ತು

(x) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ (ಪ್ರಬಂಧಕ ಮಂಡಳಿಯ ಸಭೆಯಲ್ಲಿ ಉಂಟಾದ ವಿವಾದಗಳನ್ನು ಹೊರತುಪಡಿಸಿ) ವಿವಾದಗಳನ್ನು ಪರಿಹರಿಸುವುದು.

(6) ಪದಾಧಿಕಾರಿ ಅಥವಾ ಸಂಸ್ಥೆ ಮತ್ತು ವಿಶ್ವವಿದ್ಯಾಲಯದ ಯಾವುದೇ ಇತರ ಪದಾಧಿಕಾರಿ ಅಥವಾ ಸಂಸ್ಥೆಯ ನಡುವೆ ವಿವಾದಗಳು ಉಂಟಾದಲ್ಲಿ, ಆ ವಿವಾದವನ್ನು ಕುಲಾಧಿಪತಿಯವರ ಪರ್ಯಾಲೋಚನೆಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿವಾದದ ಸಂದರ್ಭದಲ್ಲಿ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

16. **ಕುಲಪತಿಗಳು**.- (1) (2)ನೇ ಉಪಪ್ರಕರಣದ ಉಪಬಂಧಗಳಿಗೆ ಅನುಸಾರವಾಗಿ ನಾಮನಿರ್ದೇಶಕ ಸಮಿತಿಯು ಶಿಫಾರಸ್ಸು ಮಾಡಿದ ಮೂರು ವ್ಯಕ್ತಿಗಳ ಪೈಕಿಯಿಂದ ಒಬ್ಬರನ್ನು ಮೂರು ವರ್ಷಗಳ ಅವಧಿಗಾಗಿ ಕುಲಪತಿಗಳನ್ನಾಗಿ, ಪರಿನಿಯಮಗಳಲ್ಲಿ ನಿಯಮಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರು ನೇಮಿಸತಕ್ಕದ್ದು. ಮೂರು ವರ್ಷಗಳ ಅವಧಿಯು ಮುಗಿದ ತರುವಾಯ, ಇದನ್ನು ಮೂರು ವರ್ಷಗಳ ಮತ್ತೊಂದು ಅವಧಿಗೆ ನವೀಕರಿಸಬಹುದು:

ಪರಂತು, ಕುಲಪತಿಯವರು, ತಮ್ಮ ಅವಧಿ ಮುಗಿದ ನಂತರವೂ ಹೊಸ ಕುಲಪತಿಯವರು ಸೇರಿಕೊಳ್ಳುವವರೆಗೆ ಪದದಲ್ಲಿ ಮುಂದುವರೆಯತಕ್ಕದ್ದು. ಆದಾಗ್ಯೂ ಈ ಅವಧಿಯು ಯಾವುದೇ ಸಂದರ್ಭದಲ್ಲಿ ಒಂದು ವರ್ಷವನ್ನು ಮೀರತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಹೇಳಿರುವ ನಾಮನಿರ್ದೇಶಕ ಸಮಿತಿಯಲ್ಲಿ ಈ ಮುಂದಿನ ವ್ಯಕ್ತಿಗಳು ಇರತಕ್ಕದ್ದು, ಎಂದರೆ:-

(i) ಕುಲಾಧಿಪತಿಯವರು ನಾಮನಿರ್ದೇಶಿಸಿದ ಒಬ್ಬ ವ್ಯಕ್ತಿ;

(ii) ಪ್ರಬಂಧಕ ಮಂಡಳಿಯ ಇಬ್ಬರು ನಾಮ ನಿರ್ದೇಶಿತರು, ಇವರಲ್ಲಿ ಒಬ್ಬರನ್ನು ಪ್ರಬಂಧಕ ಮಂಡಳಿಯು ಸಮಿತಿಯ ಸಂಚಾಲಕರೆಂದು ನಾಮನಿರ್ದೇಶಿಸತಕ್ಕದ್ದು.

(3) ನಾಮನಿರ್ದೇಶನ ಸಮಿತಿಯು, ಅರ್ಹತೆಯ ಆಧಾರದ ಮೇಲೆ ಕುಲಪತಿಯ ಹುದ್ದೆಗೆ ಸೂಕ್ತವಾದ ಮೂರು ವ್ಯಕ್ತಿಗಳ ಹೆಸರನ್ನು ಶಿಫಾರಸ್ಸು ಮಾಡತಕ್ಕದ್ದು ಮತ್ತು ಅದನ್ನು ಪ್ರತಿಯೊಬ್ಬ ವ್ಯಕ್ತಿಯ ವಿದ್ಯಾರ್ಹತೆ ಮತ್ತಿತರ ವಿಶಿಷ್ಟ ಪ್ರಶಸ್ತಿಗಳನ್ನು ತಿಳಿಸುವ ಒಂದು ಸಂಕ್ಷಿಪ್ತ ವರದಿಯೊಂದಿಗೆ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು.

(4) ಕುಲಪತಿಯವರು ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಾಹಕ ಮತ್ತು ಶೈಕ್ಷಣಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣವನ್ನು ಚಲಾಯಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯದ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೊಳಿಸತಕ್ಕದ್ದು:

ಪರಂತು, ಶಿಕ್ಷಕರ ನೇಮಕಾತಿಯನ್ನು ಹೊರತುಪಡಿಸಿ ಕೂಡಲೇ ಕ್ರಮವನ್ನು ಕೈಗೊಳ್ಳಬೇಕಾದ ತುರ್ತು ಸ್ವರೂಪದ ಯಾವುದೇ ಇತರ ವಿಷಯಗಳಲ್ಲಿ ಮತ್ತು ಅದನ್ನು ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ವಿಶ್ವವಿದ್ಯಾಲಯವು ಇದಕ್ಕಾಗಿ ಅಧಿಕೃತಗೊಳಿಸಿದ್ದ ಯಾವೊಬ್ಬ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ಇತರ ಸಂಸ್ಥೆಯು ಕೂಡಲೇ ಕ್ರಮಕೈಗೊಳ್ಳುವುದು ಸಾಧ್ಯವಿರದಿರುವಾಗ ಕುಲಪತಿಯವರು ತಾನು ಸೂಕ್ತವೆಂದು ಭಾವಿಸಬಹುದಾದಂತಹ ಕ್ರಮವನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆದು ಕೈಗೊಳ್ಳತಕ್ಕದ್ದು.

(5) ಕುಲಪತಿಯವರು ಪರಿನಿಯಮಗಳು ಅಥವಾ ನಿಯಮಗಳಲ್ಲಿ ಹೇಳಲಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು:

ಪರಂತು, ಕುಲಪತಿಗಳ ಅಭಿಪ್ರಾಯದಲ್ಲಿ, ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಯಾವುದೇ ನಿರ್ಣಯವು, ಈ ಅಧಿನಿಯಮ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳು, ವಿನಿಯಮಗಳು ಅಥವಾ ನಿಯಮಗಳ ಮೂಲಕ ಪ್ರದತ್ತವಾದ ಅಧಿಕಾರದ ಹೊರಗಿದ್ದರೆ ಅಥವಾ ವಿಶ್ವವಿದ್ಯಾಲಯದ ಹಿತಾಸಕ್ತಿಗೆ ಪ್ರತಿಕೂಲವಾಗಬಹುದಾಗಿದ್ದರೆ, ಅದರ ನಿರ್ಣಯದ ದಿನಾಂಕದಿಂದ ಹದಿನೈದು ದಿನಗಳ ಒಳಗೆ ತನ್ನ ನಿರ್ಣಯವನ್ನು ಪರಿಷ್ಕರಿಸಲು ಸಂಬಂಧಪಟ್ಟ ಪ್ರಾಧಿಕಾರವನ್ನು ಆತನು ಕೋರತಕ್ಕದ್ದು ಮತ್ತು ಪ್ರಾಧಿಕಾರವು ಅಂಥ ನಿರ್ಣಯವನ್ನು ಸಂಪೂರ್ಣವಾಗಿ ಅಥವಾ ಭಾಗಶಃವಾಗಿ ಪರಿಷ್ಕರಿಸಲು ನಿರಾಕರಿಸಿದ ಸಂದರ್ಭದಲ್ಲಿ ಅಥವಾ ಹದಿನೈದು ದಿನಗಳೊಳಗೆ ಯಾವುದೇ ನಿರ್ಣಯವನ್ನು ತೆಗೆದುಕೊಳ್ಳಲು ವಿಫಲವಾದಲ್ಲಿ, ನಂತರ ಅಂಥ ವಿಷಯವನ್ನು ಕುಲಾಧಿಪತಿಗಳಿಗೆ ಕಳುಹಿಸತಕ್ಕದ್ದು ಮತ್ತು ಈ ಬಗ್ಗೆ ಇವರ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

(6) ಕುಲಪತಿಯವರ ಸೇವೆಗಳನ್ನು, ಪ್ರಬಂಧಕ ಮಂಡಳಿಯ ಅನುಮೋದನೆಯೊಂದಿಗೆ ಮತ್ತು ಸಹಜ ನ್ಯಾಯದ ತತ್ವಗಳನ್ನು ಅನುಸರಿಸಿದ ನಂತರ ಹಾಗೂ ಶಿಸ್ತಿನ ಆಧಾರದ ಮೇಲೆ ಅಂತ್ಯಗೊಳಿಸುವ ಸಂದರ್ಭವೂ ಸೇರಿದಂತೆ, ಪ್ರಕರಣದ ಬಗ್ಗೆ ಕುಲಪತಿಯು ತನ್ನ ಅಹವಾಲನ್ನು

ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡಿದ ತರುವಾಯ, ಕುಲಾಧಿಪತಿಯವರು ಅಂತ್ಯಗೊಳಿಸಬಹುದು.

(7) ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಸಂದರ್ಶಕರು, ಸಹ-ಸಂದರ್ಶಕರು ಮತ್ತು ಕುಲಾಧಿಪತಿಯವರು ಇವರುಗಳ ಗೈರು ಹಾಜರಿಯ ಸಂದರ್ಭದಲ್ಲಿ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

17. **ಸಹಕುಲಪತಿಗಳು**.- ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಮೂರು ಜನರನ್ನು ಮೀರದಂತೆ ಸಹಕುಲಪತಿಗಳನ್ನು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

18. **ವ್ಯಾಸಂಗ ವಿಭಾಗಗಳ ಡೀನ್‌ಗಳು**.- ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಪರಿನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವ್ಯಾಸಂಗ ವಿಭಾಗಗಳ ಡೀನ್‌ಗಳನ್ನು ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

19. **ಕುಲಸಚಿವರು**.- (1) ಕುಲಾಧಿಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಸಚಿವರನ್ನು ನೇಮಕ ಮಾಡತಕ್ಕದ್ದು.

(2) ಪರಿನಿಯಮಗಳಲ್ಲಿ ಪರಿಭಾಷಿಸಿರುವಂಥ ಎಲ್ಲಾ ಕರಾರುಗಳನ್ನು ವಿಶ್ವವಿದ್ಯಾಲಯದ ಪರವಾಗಿ ಕುಲಸಚಿವರು ಮಾಡಿಕೊಳ್ಳತಕ್ಕದ್ದು ಮತ್ತು ಅದಕ್ಕೆ ಸಹಿ ಹಾಕತಕ್ಕದ್ದು.

(3) ಕುಲಸಚಿವರು ವಿಶ್ವವಿದ್ಯಾಲಯದ ಪರವಾಗಿ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಪರಿನಿಯಮಗಳಿಂದ ಪ್ರದತ್ತಗೊಳಿಸಬಹುದಾದಂಥ ಅಥವಾ ಕುಲಾಧಿಪತಿಯವರು ಮತ್ತು ಕುಲಪತಿಯವರು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು ವಿಶ್ವವಿದ್ಯಾಲಯದ ದಾಖಲೆಗಳು ಮತ್ತು ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು, ಕುಲಪತಿಯವರು ಅಥವಾ ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಅಂಥ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿತಕ್ಕದ್ದು.

20. **ಹಣಕಾಸು ಅಧಿಕಾರಿ**.- ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು, ಪರಿನಿಯಮಗಳ ಮೂಲಕ ಪ್ರದತ್ತಗೊಳಿಸಬಹುದಾದ ಅಂಥ ವಿಧಾನದಲ್ಲಿ ಹಣಕಾಸು ಅಧಿಕಾರಿಯನ್ನು ನೇಮಕ ಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

21. **ಇತರ ಅಧಿಕಾರಿಗಳು**.- ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ ನೇಮಕಾತಿಯ ವಿಧಾನ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಕರ್ತವ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ - IV
## ವಿಶ್ವವಿದ್ಯಾಲಯದ ಪ್ರಾಧಿಕಾರಗಳು

22. **ವಿಶ್ವವಿದ್ಯಾಲಯದ ಪ್ರಾಧಿಕಾರಗಳು.-** ಈ ಮುಂದಿನವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:-

(i) ಪ್ರಬಂಧಕ ಮಂಡಳಿ;

(ii) ವ್ಯವಸ್ಥಾಪನಾ ಮಂಡಳಿ;

(iii) ಶೈಕ್ಷಣಿಕ ಪರಿಷತ್ತು;

(iv) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು;

(v) ಹಣಕಾಸು ಸಮಿತಿ; ಮತ್ತು

(vi) ವಿಶ್ವವಿದ್ಯಾಲಯದ ಪ್ರಾಧಿಕಾರಗಳೆಂದು ಪರಿನಿಯಮಗಳ ಮೂಲಕ ಘೋಷಿಸಬಹುದಾದ ಅಂಥ ಇತರ ಪ್ರಾಧಿಕಾರಗಳು.

23. **ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು.-** (1) ಪ್ರಬಂಧಕ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಾಧಿಪತಿಯವರು - ಅಧ್ಯಕ್ಷರು;

(ii) ಕುಲಪತಿಯವರು - ಸದಸ್ಯರು;

(iii) ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಅಥವಾ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ-ಪದನಿಮಿತ್ತ ಸದಸ್ಯರು;

(iv) ಸರ್ಕಾರದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ-ಪದನಿಮಿತ್ತ ಸದಸ್ಯರು;

(v) ರಾಜ್ಯ ಸರ್ಕಾರವು ನಾಮ ನಿರ್ದೇಶನ ಮಾಡಿದ ಆಡಳಿತವನ್ನು ಒಳಗೊಂಡಂತೆ ವ್ಯವಸ್ಥಾಪನೆ, ಹಣಕಾಸು ಅಥವಾ ಯಾವುದೇ ಇತರ ವಿಶೇಷ ಕ್ಷೇತ್ರದಲ್ಲಿನ ಒಬ್ಬರು ತಜ್ಞರು ಸದಸ್ಯರು;

(vi) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಮೂವರು ವ್ಯಕ್ತಿಗಳು ಅವರ ಪೈಕಿ ಒಬ್ಬರು ಮಹಿಳೆಯಾಗಿರತಕ್ಕದ್ದು-ಸದಸ್ಯರು;

(vii) ಸಹ ಕುಲಪತಿಯವರು ಮತದಾನದ ಹಕ್ಕಿಲ್ಲದ ಸದಸ್ಯರಾಗಿರತಕ್ಕದ್ದು; ಮತ್ತು

(viii) ವಿಶ್ವವಿದ್ಯಾಲಯ ಅನುದಾನ ಆಯೋಗದ ನಾಮನಿರ್ದೇಶಿತ ಒಬ್ಬ ಸುಪ್ರಸಿದ್ಧ ಶಿಕ್ಷಣ ತಜ್ಞರು- ಸದಸ್ಯರು.

(2) ಕುಲಸಚಿವರು ಪ್ರಬಂಧಕ ಮಂಡಳಿಯ ಮತದಾನದ ಹಕ್ಕಿರದ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ಪ್ರಬಂಧಕ ಮಂಡಳಿಯ ಸದಸ್ಯರ ಪದಾವಧಿ, ಸರ್ಕಾರದಿಂದ ನಾಮನಿರ್ದೇಶಿತರಾದ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ನೇಮಕಾತಿ, ನವೀಕರಣ ಮತ್ತು ತೆಗೆದುಹಾಕುವುದು ಮುಂತಾದವುಗಳು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಾಧಿಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರ ಗೈರುಹಾಜರಿಯಲ್ಲಿ ಕುಲಾಧಿಪತಿಯವರಿಂದ ನಾಮನಿರ್ದೇಶಿತರಾದ ಯಾರಾದರೂ ಒಬ್ಬರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು. ಅಂಥ ಸಭೆಯ ಅಧ್ಯಕ್ಷತೆಯನ್ನು ವಹಿಸುವುದಕ್ಕೆ ಕುಲಾಧಿಪತಿಯವರು ಯಾವೊಬ್ಬ ವ್ಯಕ್ತಿಯನ್ನೂ ನಾಮನಿರ್ದೇಶನ

ಮಾಡಿರದಿದ್ದಲ್ಲಿ, ಸಭೆಯಲ್ಲಿ ಹಾಜರಿರುವ ಸದಸ್ಯರು ಸರಳ ಬಹುಮತದ ಮೂಲಕ ಅವರುಗಳ ಪೈಕಿಯಿಂದಲೇ ಆ ಸಭೆಗೆ ಮಾತ್ರವೇ ಅಧ್ಯಕ್ಷನನ್ನು ಚುನಾಯಿಸತಕ್ಕದ್ದು.

(5) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಿಗೆ, ಅಂಥ ಸಭೆಯಲ್ಲಿ ಹಾಜರಾಗುವ ಮತ್ತು ಮತದಾನ ನೀಡುವ ಮೂರು ಜನ ಸದಸ್ಯರು ಗಣಪೂರ್ತಿ (ಕೋರಂ) ಆಗಿರತಕ್ಕದ್ದು:

ಪರಂತು, ಪ್ರಬಂಧಕ ಮಂಡಳಿಯ ಯಾವುದೇ ಸಭೆಯ ಕೋರಂ ಪೂರ್ಣವಾಗಬೇಕಾದರೆ ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಿರುವುದು ಮತ್ತು ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ನಾಮನಿರ್ದೇಶಿತರು ಹಾಜರಾಗದೇ ಇದ್ದಾಗ ಕುಲಪತಿಯವರು ಹಾಜರಿರುವುದು ಯಾವಾಗಲೂ ಅವಶ್ಯವಾಗಿರತಕ್ಕದ್ದು.

(6) ಪ್ರಬಂಧಕ ಮಂಡಳಿಯು ವಿಶ್ವವಿದ್ಯಾಲಯದ ಪ್ರಧಾನ ಪ್ರಬಂಧಕ ಸಂಸ್ಥೆಯಾಗಿರತಕ್ಕದ್ದು ಮತ್ತು ಅದು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಕಗೊಳಿಸುವುದು;

(ii) ವಿಶ್ವವಿದ್ಯಾಲಯವು ಅನುಸರಿಸಬೇಕಾದ ಕಾರ್ಯನೀತಿಗಳನ್ನು ರಚಿಸುವುದು;

(iii) ಈ ಅಧಿನಿಯಮದ ಅಥವಾ ಪರಿನಿಯಮಗಳ ಅಥವಾ ನಿಯಮಗಳ ಉಪಬಂಧಗಳಿಗೆ ಅನುಗುಣವಾಗಿ ಇರದ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ತೀರ್ಮಾನಗಳನ್ನು ಪುನರೀಕ್ಷಿಸುವುದು;

(iv) ವಿಶ್ವವಿದ್ಯಾಲಯದ ಆಯವ್ಯಯ ಮತ್ತು ವಾರ್ಷಿಕ ವರದಿಗಳನ್ನು ಅನುಮೋದಿಸುವುದು;

(v) ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸುವುದು ಅಥವಾ ಈಗಾಗಲೇ ಇರುವ ಪರಿನಿಯಮಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವುದು ಅಥವಾ ನಿರಸನಗೊಳಿಸುವುದು;

(vi) ವಿಶ್ವವಿದ್ಯಾಲಯವನ್ನು ಸ್ವಯಂಸಮಾಪನಗೊಳಿಸುವ ನಿರ್ಧಾರವನ್ನು ತೆಗೆದುಕೊಳ್ಳುವುದು;

(vii) ಸರ್ಕಾರಕ್ಕೆ ಸಲ್ಲಿಸುವ ಪ್ರಸ್ತಾವಗಳನ್ನು ಅನುಮೋದಿಸುವುದು;

(viii) ಶುಲ್ಕ ನಿಯಂತ್ರಣ ಸಮಿತಿಗೆ ಮೂವರು ಸದಸ್ಯರನ್ನು ನಾಮನಿರ್ದೇಶನ ಮಾಡುವುದು;

(ix) ವಿಶ್ವವಿದ್ಯಾಲಯದ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕೆ ಅಪೇಕ್ಷಣೀಯವೆಂದು ಕಂಡುಬರುವಂಥ ತೀರ್ಮಾನಗಳನ್ನು ಮತ್ತು ಕ್ರಮಗಳನ್ನು ಕೈಗೊಳ್ಳುವುದು.

(7) ಪ್ರಬಂಧಕ ಮಂಡಳಿಯು ಒಂದು ವರ್ಷದಲ್ಲಿ ಕನಿಷ್ಠ ಮೂರು ಸಲ ಸಭೆ ಸೇರತಕ್ಕದ್ದು.

(8) ಪ್ರಬಂಧಕ ಮಂಡಳಿಯು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಸಮಯ ಮತ್ತು ಸ್ಥಳದಲ್ಲಿ ಸಭೆ ಸೇರತಕ್ಕದ್ದು.

**24. ವ್ಯವಸ್ಥಾಪನಾ ಮಂಡಳಿ**.- (1) ವ್ಯವಸ್ಥಾಪನಾ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಗಳು;

(ii) ಸಹಕುಲಪತಿಗಳು;

(iii) ಕುಲಸಚಿವರು;

(iv) ಪ್ರಾಯೋಜಕ ಸಂಸ್ಥೆಯ ಇಬ್ಬರು ನಾಮನಿರ್ದೇಶಿತರು;

(v) ಕುಲಪತಿಗಳು ನಾಮನಿರ್ದೇಶಿಸಬಹುದಾದ ವಿದ್ಯಾಲಯಗಳ ಇಬ್ಬರು ಡೀನ್‌ಗಳು;

(2) ಕುಲಪತಿಯವರು ವ್ಯವಸ್ಥಾಪನಾ ಮಂಡಳಿಯ ಅಧ್ಯಕ್ಷರಾಗಿರತಕ್ಕದ್ದು ಮತ್ತು ಕುಲಸಚಿವರು ವ್ಯವಸ್ಥಾಪನಾ ಮಂಡಳಿಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ವ್ಯವಸ್ಥಾಪನಾ ಮಂಡಳಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ವ್ಯವಸ್ಥಾಪನಾ ಮಂಡಳಿಯ ಎಲ್ಲಾ ಸಭೆಗಳಲ್ಲಿ ಯಾವಾಗಲೂ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು ಹಾಗೂ ಕುಲಪತಿಯವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೇ ಇದ್ದ ಸಂದರ್ಭದಲ್ಲಿ ಸಭೆಯಲ್ಲಿ ಹಾಜರಿರುವ ಸದಸ್ಯರು ಚುನಾಯಿಸಿದ ಯಾವುದೇ ಇತರ ಸದಸ್ಯರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ವ್ಯವಸ್ಥಾಪನಾ ಮಂಡಳಿಯ ಸಭೆಯಲ್ಲಿ ಯಾವುದೇ ವಿಷಯವನ್ನು ಕುರಿತು ವಿವಾದ ಉಂಟಾದಲ್ಲಿ ಸದರಿ ವಿಷಯವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯದ ಬಗ್ಗೆ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

25. **ಶೈಕ್ಷಣಿಕ ಪರಿಷತ್ತು**.- (1) ಶೈಕ್ಷಣಿಕ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಯವರು - ಅಧ್ಯಕ್ಷರು

(ii) ಸಹಕುಲಪತಿಯವರು - ಸದಸ್ಯರು

(iii) ಕುಲಸಚಿವರು - ಕಾರ್ಯದರ್ಶಿಗಳು

(iv) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಶೈಕ್ಷಣಿಕ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಶೈಕ್ಷಣಿಕ ಸಂಸ್ಥೆಯಾಗಿರತಕ್ಕದ್ದು ಮತ್ತು ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಹಾಗೂ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

26. **ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು**.- (1) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಸಂಶೋಧನಾ ಮತ್ತು ಅನ್ವೇಷಣಾ ಸಮಿತಿಯಾಗಿರತಕ್ಕದ್ದು ಹಾಗೂ ಸಂಶೋಧನಾ ಕ್ಷೇತ್ರಗಳ ಆದ್ಯತೆಯೂ ಒಳಗೊಂಡಂತೆ, ವಿಶ್ವವಿದ್ಯಾಲಯವು ಕೈಗೊಳ್ಳಬೇಕಾದ ಸಂಶೋಧನೆಯ ಬಗ್ಗೆ ಒಂದು ವ್ಯಾಪಕವಾದ ಪರಿಪೂರ್ಣ ಭವಿಷ್ಯದ್ ದೃಷ್ಟಿಯನ್ನು ಒದಗಿಸತಕ್ಕದ್ದು. ಈ ಪರಿಷತ್ತು, ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಮತ್ತು ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಸಂಶೋಧನೆ

ಮತ್ತು ಅನ್ವೇಷಣಾ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಯವರು - ಅಧ್ಯಕ್ಷರು

(ii) ಸಹಕುಲಪತಿಯವರು - ಸದಸ್ಯರು

(iii) ಸಂಶೋಧನೆಯ ಡೀನ್ - ಕಾರ್ಯದರ್ಶಿ

(iv) ಅನ್ವೇಷಣಾ ವಿಭಾಗದ ಮುಖ್ಯಸ್ಥರು - ಸದಸ್ಯರು

(v) ಎಲ್ಲಾ ವ್ಯಾಸಂಗ ವಿಭಾಗಗಳ ಡೀನ್‌ಗಳು - ಸದಸ್ಯರು ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

27. **ಹಣಕಾಸು ಸಮಿತಿ.**- (1) ಹಣಕಾಸು ಸಮಿತಿ ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಾಧಿಪತಿಯವರು ಅಥವಾ ಅವರ ನಾಮನಿರ್ದೇಶಿತರು - ಅಧ್ಯಕ್ಷರು

(ii) ಕುಲಪತಿಯವರು - ಸದಸ್ಯರು

(iii) ಕುಲಸಚಿವರು - ಸದಸ್ಯರು

(iv) ಹಣಕಾಸು ಅಧಿಕಾರಿ -ಕಾರ್ಯದರ್ಶಿ

(v) ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು - ಸದಸ್ಯರು; ಮತ್ತು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಹಣಕಾಸು ಸಮಿತಿಯು ಹಣಕಾಸಿನ ವಿಷಯಗಳನ್ನು ಕೈಗೊಳ್ಳುವ ವಿಶ್ವವಿದ್ಯಾಲಯದ ಪ್ರಧಾನ ಹಣಕಾಸು ಸಂಸ್ಥೆಯಾಗಿರತಕ್ಕದ್ದು ಹಾಗೂ ಅದು ಈ ಅಧಿನಿಯಮ, ನಿಯಮಗಳು ಮತ್ತು ಪರಿನಿಯಮಗಳ ಉಪಬಂಧಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಹಣಕಾಸು ವಿಷಯಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

28. **ಇತರ ಪ್ರಾಧಿಕಾರಗಳು.**- ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ರಚನೆ, ಅಧಿಕಾರಗಳು ಹಾಗೂ ಪ್ರಕಾರ್ಯಗಳು ಪರಿನಿಯಮಗಳಿಂದ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

29. **ಒಂದು ಪ್ರಾಧಿಕಾರದ ಅಥವಾ ಸಂಸ್ಥೆಯ ಸದಸ್ಯತ್ವಕ್ಕೆ ಅನರ್ಹತೆ.**- ವಿಶ್ವವಿದ್ಯಾಲಯದ ಸಂಸ್ಥೆಗಳ ಯಾವುವೇ ಪ್ರಾಧಿಕಾರಗಳ ಒಬ್ಬ ವ್ಯಕ್ತಿಯು,-

(ಎ) ಅಸ್ವಸ್ಥ ಚಿತ್ತನಾಗಿದ್ದು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿಸಲ್ಪಟ್ಟಿದ್ದರೆ;

(ಬಿ) ಅವಿಮುಕ್ತ ದಿವಾಳಿಯಾಗಿದ್ದರೆ;

(ಸಿ) ನೈತಿಕ ಅಧಃಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದರೆ;

(ಡಿ) ಖಾಸಗಿ ಬೋಧನಾ ತರಗತಿಗಳನ್ನು ನಡೆಸುತ್ತಿದ್ದರೆ ಅಥವಾ ಸ್ವತಃ ನಿರತನಾಗಿದ್ದರೆ;

(ಇ) ಯಾವುದೇ ವಿಧದಲ್ಲಿ, ಎಲ್ಲಿಯೇ, ಯಾವುದೇ ಪರೀಕ್ಷೆಯನ್ನು ನಡೆಸುವಲ್ಲಿ ಅನುಚಿತ ಅಭ್ಯಾಸದಲ್ಲಿ ತೊಡಗಿದ್ದಕ್ಕಾಗಿ ಅಥವಾ ಉತ್ತೇಜಿಸಿದ್ದಕ್ಕಾಗಿ ದಂಡಿತನಾಗಿದ್ದರೆ;

(ಎಫ್) ಪ್ರಾಯೋಜಿತ ಸಂಸ್ಥೆಯು ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಯಾವೊಬ್ಬ ಸದಸ್ಯನನ್ನು ಆ ಪದವನ್ನು ಹೊಂದಿರುವುದಕ್ಕೆ ಅರ್ಹನಲ್ಲನೆಂದು ಲಿಖಿತದಲ್ಲಿ ಅಭಿಪ್ರಾಯ ನೀಡಿದಾಗಲೆಲ್ಲಾ,

-ಸದಸ್ಯನಾಗಿರುವುದಕ್ಕೆ ಅನರ್ಹನಾಗತಕ್ಕದ್ದು.

**30. ಖಾಲಿಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ.**- ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಕಾರ್ಯ ಅಥವಾ ವ್ಯವಹರಣೆಗಳು ಕೇವಲ ಅದರಲ್ಲಿ ಯಾವುದೇ ಖಾಲಿಸ್ಥಾನ ಇದೆ ಎಂಬ ಕಾರಣದಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣದಿಂದ ಮಾತ್ರವೇ ಅಸಿಂಧುವಾಗತಕ್ಕದ್ದಲ್ಲ.

**31. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು.**- (1) ಯಾವುವೇ ಕಾರ್ಯಸೂಚಿ ವಿಷಯಗಳನ್ನು ಕುಲಾಧಿಪತಿಯವರ ಪೂರ್ವಾನುಮೋದನೆಯನ್ನು ಪಡೆಯದೇ ಪ್ರಬಂಧಕ ಮಂಡಳಿಯ ಅಥವಾ ಕಾರ್ಯಕಾರಿ ಪರಿಷತ್ತು ಅಥವಾ ಯಾವುದೇ ಸಮಿತಿಯ ಸಭೆಗಳ ಕಾರ್ಯಸೂಚಿ ವಿಷಯಗಳಲ್ಲಿ ಸೇರಿಸತಕ್ಕದ್ದಲ್ಲ ಅಥವಾ ಚರ್ಚೆಗೆ ತೆಗೆದುಕೊಳ್ಳತಕ್ಕದ್ದಲ್ಲ ಮತ್ತು ತೀರ್ಮಾನಿಸತಕ್ಕದ್ದಲ್ಲ.

(2) ಈ ಅಧಿನಿಯಮದ ಯಾವುದೇ ಉಪಬಂಧಗಳನ್ನು ಪಾಲಿಸದೆ ಇರುವ ಸಂದರ್ಭದಲ್ಲಿ, ಕುಲಾಧಿಪತಿಯವರು ವಿಶ್ವವಿದ್ಯಾಲಯದ ಯಾವುದೇ ಪದಾಧಿಕಾರಿ ಅಥವಾ ಸಂಸ್ಥೆಯು ತೆಗೆದುಕೊಂಡ ಎಲ್ಲಾ ತೀರ್ಮಾನಗಳನ್ನು ವಿಪರ್ಯಯಗೊಳಿಸುವ ಮೂಲಕ ಪರಿಹಾರ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಅಧಿಕಾರವನ್ನು ಎಲ್ಲಾ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಅಂಥ ಪರಿಹಾರ ಕ್ರಮದ ಪರಿಣಾಮವಾಗಿ ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ವಿಶ್ವವಿದ್ಯಾಲಯದ ಪದಾಧಿಕಾರಿ ಅಥವಾ ಸಂಸ್ಥೆಯು ಕೈಗೊಂಡಿದ್ದ ಎಲ್ಲಾ ಅಂಥ ಕ್ರಮಗಳು, ಮೊದಲಿನಿಂದಲೂ ಶೂನ್ಯ ಮತ್ತು ಅಕೃತ ಎಂದು ಭಾವಿಸತಕ್ಕದ್ದು ಹಾಗೂ ತತ್ಪರಿಣಾಮವಾಗಿ, ಉಪಬಂಧ ಪಾಲಿಸದೇ ಇದ್ದ ವಿಷಯ ಅಥವಾ ನಿರ್ಧಾರದ ಸಂಬಂಧದಲ್ಲಿ ಅದಕ್ಕೆ ಮುಂಚೆ ಇದ್ದ ವಸ್ತುಸ್ಥಿತಿಯೇ ಮುಂದುವರಿಯತಕ್ಕದ್ದು.

## ಅಧ್ಯಾಯ - V
## ಪರಿನಿಯಮಗಳು ಮತ್ತು ವಿನಿಯಮಗಳು

**32. ಪರಿನಿಯಮಗಳು.**- ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಪರಿನಿಯಮಗಳು ವಿಶ್ವವಿದ್ಯಾಲಯಕ್ಕೆ ಮತ್ತು ಸಿಬ್ಬಂದಿಗೆ ಸಂಬಂಧಿಸಿದ ಎಲ್ಲಾ ಅಥವಾ ಯಾವುದೇ ವಿಷಯಕ್ಕೆ ಈ ಕೆಳಗಿನಂತೆ ಉಪಬಂಧ ಕಲ್ಪಿಸಬಹುದು, ಎಂದರೆ:-

(i) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಕಾರ್ಯಕಲಾಪಗಳನ್ನು ನಡೆಸುವ ಮತ್ತು ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸದಿರುವ ಸಂಸ್ಥೆಗಳ ರಚನೆಯ ಕಾರ್ಯವಿಧಾನ;

(ii) 5 ಮತ್ತು 47ನೇ ಪ್ರಕರಣಕ್ಕೆ ಒಳಪಟ್ಟು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ವಿಶ್ವವಿದ್ಯಾಲಯ ದತ್ತಿ ನಿಧಿ, ಸಾಮಾನ್ಯ ನಿಧಿ ಹಾಗೂ ಅಭಿವೃದ್ಧಿ ನಿಧಿಗಳ ನಿರ್ವಹಣೆ;

(iii) ಕುಲಪತಿಗಳು, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರ ನೇಮಕಾತಿಯ ನಿಬಂಧನೆಗಳು ಹಾಗೂ ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಪ್ರಕಾರ್ಯಗಳು;

(iv) ರಾಜ್ಯ ಸರ್ಕಾರವು ಮಾಡಿದ ನಿಯಮಗಳು ಯಾವುದಾದರೂ ಇದ್ದಲ್ಲಿ ಅದಕ್ಕೆ ಒಳಪಟ್ಟು ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ, ಅಧ್ಯಾಪಕರ ಮತ್ತು ನೌಕರರ ನೇಮಕಾತಿ ವಿಧಾನ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(v) ವಿಶ್ವವಿದ್ಯಾಲಯ ಹಾಗೂ ಅದರ ಅಧಿಕಾರಿಗಳು, ವ್ಯಾಸಂಗ ವಿಭಾಗದ (ಫ್ಯಾಕಲ್ಟಿ) ಸದಸ್ಯರು, ನೌಕರರು ಹಾಗೂ ವಿದ್ಯಾರ್ಥಿಗಳ ನಡುವೆ ಉಂಟಾದ ವಿವಾದಗಳನ್ನು ಪರಿಹರಿಸುವ ಕಾರ್ಯವಿಧಾನ;

(vi) ವಿಭಾಗಗಳು ಮತ್ತು ವ್ಯಾಸಂಗ ವಿಭಾಗಗಳ (ಫ್ಯಾಕಲ್ಟಿಗಳ) ಸೃಜನೆ, ರದ್ದತಿ ಅಥವಾ ಪುನಾರಚನೆ;

(vii) ಇತರ ವಿಶ್ವವಿದ್ಯಾಲಯಗಳು ಅಥವಾ ಉನ್ನತ ಕಲಿಕಾ ಸಂಸ್ಥೆಗಳ ಜೊತೆಯಲ್ಲಿ ಸಹಕರಿಸಬೇಕಾದ ರೀತಿ;

(viii) ಗೌರವ ಪದವಿಗಳ ನೀಡಿಕೆಯ ಕಾರ್ಯವಿಧಾನ;

(ix) ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿವೇತನ ಮಂಜೂರಾತಿಗೆ ಸಂಬಂಧಿಸಿದ ಉಪಬಂಧಗಳು;

(x) ವಿವಿಧ ವ್ಯಾಸಂಗ ಕ್ರಮಗಳಲ್ಲಿನ ಸೀಟುಗಳ ಸಂಖ್ಯೆಗೆ ಸಂಬಂಧಿಸಿದ ಕಾರ್ಯನೀತಿಗಳು ಮತ್ತು ಅಂಥ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಕಾರ್ಯವಿಧಾನ;

(xi) ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಶುಲ್ಕಕ್ಕೆ ಸಂಬಂಧಿಸಿದ ಕಾರ್ಯನೀತಿ;

(xii) ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಉಚಿತ ಶಿಕ್ಷಣ, ಪದಕಗಳು ಹಾಗೂ ಬಹುಮಾನಗಳನ್ನು ಪ್ರಾರಂಭಿಸುವುದು;

(xiii) ಪ್ರಬಂಧಕ ಮಂಡಳಿಯು ನಿರ್ಧರಿಸಬಹುದಾದ ಅಥವಾ ಈ ಅಧಿನಿಯಮದ ಅಡಿಯಲ್ಲಿ ಪರಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬೇಕಾದ ಅಗತ್ಯತೆಯುಳ್ಳ ಯಾವುದೇ ಇತರ ವಿಷಯಗಳು.

33. **ಪರಿನಿಯಮಗಳ ರಚನೆ ವಿಧಾನ.**- (1) ವ್ಯವಸ್ಥಾಪನಾ ಮಂಡಳಿಯು ರಚಿಸಿದ ಮೊದಲ ಪರಿನಿಯಮಗಳನ್ನು ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ವ್ಯವಸ್ಥಾಪನಾ ಮಂಡಳಿಯು ಸಲ್ಲಿಸಿದ ಮೊದಲ ಪರಿನಿಯಮಗಳನ್ನು ಪ್ರಬಂಧಕ ಮಂಡಳಿಯು ಪರಿಗಣಿಸತಕ್ಕದ್ದು ಹಾಗೂ ತಾನು ಅವಶ್ಯವೆಂದು ಭಾವಿಸಬಹುದಾದ ಅಂಥ ಮಾರ್ಪಾಡುಗಳು, ಯಾವುದಾದರು ಇದ್ದಲ್ಲಿ, ಅವುಗಳೊಡನೆ ತನ್ನ ಅನುಮೋದನೆಯನ್ನು ನೀಡತಕ್ಕದ್ದು.

(3) ವಿಶ್ವವಿದ್ಯಾಲಯವು, ಪ್ರಬಂಧಕ ಮಂಡಳಿಯು ಅನುಮೋದಿಸಿದ ಮೊದಲ ಪರಿನಿಯಮಗಳನ್ನು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ಪ್ರಕಟಿಸತಕ್ಕದ್ದು ಮತ್ತು ತದನಂತರ ಮೊದಲ ಪರಿನಿಯಮಗಳ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

34. **ಪರಿನಿಯಮಗಳ ತಿದ್ದುಪಡಿಯ ಅಧಿಕಾರ**.- ಪ್ರಬಂಧಕ ಮಂಡಳಿಯು ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸಬಹುದು ಅಥವಾ ಪರಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ಅವನ್ನು ನಿರಸನಗೊಳಿಸಬಹುದು.

35. **ವಿನಿಯಮಗಳು**.- ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ವಿನಿಯಮಗಳು ಈ ಮುಂದಿನ ವಿಷಯಗಳಿಗೆ ಉಪಬಂಧಗಳನ್ನು ಕಲ್ಪಿಸಬಹುದು, ಎಂದರೆ:-

(i) ವಿಶ್ವವಿದ್ಯಾಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ವಿದ್ಯಾರ್ಥಿ ಪಟ್ಟಿಯಲ್ಲಿ ಅವರುಗಳ ದಾಖಲಾತಿ ಹಾಗೂ ಮುಂದುವರಿಕೆ;

(ii) ವಿಶ್ವವಿದ್ಯಾಲಯದ ಎಲ್ಲಾ ಪದವಿಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ನಿಗದಿಪಡಿಸತಕ್ಕ ವ್ಯಾಸಂಗ ಕ್ರಮಗಳು;

(iii) ಪದವಿಗಳ ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರದಾನ;

(iv) ಸಂಶೋಧನಾ ವೇತನಗಳು (ಫೆಲೋಶಿಪ್), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಪದಕಗಳು ಮತ್ತು ಬಹುಮಾನಗಳನ್ನು ನೀಡಲು ಷರತ್ತುಗಳು;

(v) ಪರೀಕ್ಷೆಗಳನ್ನು ನಡೆಸುವುದು ಹಾಗೂ ಪರೀಕ್ಷೆ ನಡೆಸುವ ಸಂಸ್ಥೆಗಳು, ಪರೀಕ್ಷಕರು, ಪರೀಕ್ಷಾ ಮೇಲ್ವಿಚಾರಕರು, ಟ್ಯಾಬುಲೇಟರ್‌ಗಳು ಮತ್ತು ಮಾಡರೇಟರ್‌ಗಳ ನೇಮಕಾತಿ ಷರತ್ತುಗಳು ಮತ್ತು ವಿಧಾನ ಹಾಗೂ ಅವರ ಕರ್ತವ್ಯಗಳು;

(vi) ವಿಶ್ವವಿದ್ಯಾಲಯದ ಪರೀಕ್ಷೆಗಳಿಗೆ, ಪದವಿಗಳಿಗೆ ಹಾಗೂ ಇತರ ಶೈಕ್ಷಣಿಕ ಪ್ರಶಸ್ತಿಗಳಿಗೆ ಪ್ರವೇಶಕ್ಕೆ ವಿಧಿಸತಕ್ಕ ಶುಲ್ಕ;

(vii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನಲ್ಲಿ ವಿದ್ಯಾರ್ಥಿಗಳ ನಿವಾಸಕ್ಕಾಗಿ ಷರತ್ತುಗಳು;

(viii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಶಿಸ್ತು ಪಾಲನೆ; ಮತ್ತು

(ix) ಈ ಅಧಿನಿಯಮದ ಅಡಿಯಲ್ಲಿನ ಪರಿನಿಯಮಗಳಲ್ಲಿ ಉಪಬಂಧ ಕಲ್ಪಿಸಬಹುದಾಂಥ ಇತರ ಎಲ್ಲಾ ವಿಷಯಗಳು.

36. **ವಿನಿಯಮಗಳ ರಚನೆ ವಿಧಾನ**.- ವಿನಿಯಮಗಳನ್ನು ಶೈಕ್ಷಣಿಕ ಪರಿಷತ್ತು ರಚಿಸತಕ್ಕದ್ದು ಹಾಗೂ ವ್ಯವಸ್ಥಾಪನಾ ಮಂಡಳಿಯು ಅನುಮೋದಿಸತಕ್ಕದ್ದು.

37. **ವಿನಿಯಮಗಳ ತಿದ್ದುಪಡಿಗೆ ಅಧಿಕಾರ**.- ವ್ಯವಸ್ಥಾಪನಾ ಮಂಡಳಿಯ ಅನುಮೋದನೆಯೊಡನೆ ಶೈಕ್ಷಣಿಕ ಪರಿಷತ್ತು ಹೊಸ ವಿನಿಯಮಗಳನ್ನು ಅಥವಾ ಹೆಚ್ಚುವರಿ ವಿನಿಯಮಗಳನ್ನು ರಚಿಸಬಹುದು ಅಥವಾ ವಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ನಿರಸನಗೊಳಿಸಬಹುದು.

38. **ಶುಲ್ಕ ನಿಗದಿ**.- (1) 9ನೇ ಪ್ರಕರಣದ ಪರಂತುಕದ ಅಡಿಯಲ್ಲಿ ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರ ಅಥವಾ ಸಂದರ್ಭಾನುಸಾರವಾಗಿ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡಲಾದ ಪ್ರವೇಶಗಳಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳಲ್ಲಿನ ಶೇಕಡಾ ನಲವತ್ತರಷ್ಟು ಪ್ರವೇಶಗಳ ಸಂಬಂಧದಲ್ಲಿ ಶುಲ್ಕವು ಸರ್ಕಾರ ಮತ್ತು ವಿಶ್ವವಿದ್ಯಾಲಯವು ಸಮ್ಮತಾಭಿಪ್ರಾಯದ ಒಪ್ಪಂದದ ಪ್ರಕಾರ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) ಅಧಿನಿಯಮ, 2006ರ (2006ರ ಕರ್ನಾಟಕ ಅಧಿನಿಯಮ

8) ಅನುಸಾರವಾಗಿ ಸರ್ಕಾರಿ ಸೀಟುಗಳಿಗಾಗಿ ರಾಜ್ಯ ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸಿದಂತೆ ಇರತಕ್ಕದ್ದು.

(2) ವಿಶ್ವವಿದ್ಯಾಲಯದ ಇತರ ಸೀಟುಗಳಿಗೆ ಸಂಬಂಧಿಸಿದಂತೆ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳು (ಪ್ರವೇಶ, ನಿಯಂತ್ರಣ ಮತ್ತು ಶುಲ್ಕ ನಿಗದಿ) ಅಧಿನಿಯಮ, 2006ರ (2006ರ ಕರ್ನಾಟಕ ಅಧಿನಿಯಮ 8) 6ನೇ ಪ್ರಕರಣದ ಉಪಬಂಧಗಳ ಅನುಸಾರವಾಗಿ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರ ಅಧ್ಯಕ್ಷತೆಯ ಅಡಿಯಲ್ಲಿ ರಚಿಸಲಾದ ಶುಲ್ಕ ನಿಯಂತ್ರಣ ಸಮಿತಿಯ ಮೂಲಕ ಶುಲ್ಕವನ್ನು ನಿಗದಿಪಡಿಸತಕ್ಕದ್ದು. ಈ ಪ್ರಕರಣದ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವನ್ನು ಖಾಸಗಿ ಅನುದಾನರಹಿತ ವೃತ್ತಿಪರ ಶಿಕ್ಷಣ ಸಂಸ್ಥೆ ಎಂದು ಭಾವಿಸತಕ್ಕದ್ದು.

## ಅಧ್ಯಾಯ - VI
## ಸಂಕೀರ್ಣ

39. **ನೌಕರರ ಸೇವಾ ಷರತ್ತುಗಳು**.- (1) ಪರಿನಿಯಮಗಳ ಮತ್ತು ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಥವಾ ನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳು, ಯಾವುದಾದರೂ ಇದ್ದಲ್ಲಿ, ಅವುಗಳಿಗೆ ಒಳಪಟ್ಟು ಪ್ರತಿಯೊಬ್ಬ ನೌಕರನು ಲಿಖಿತ ಕರಾರಿನ ಅಡಿಯಲ್ಲಿ ನೇಮಕಗೊಳ್ಳತಕ್ಕದ್ದು ಮತ್ತು ಅದನ್ನು ವಿಶ್ವವಿದ್ಯಾಲಯದಲ್ಲಿ ಇಟ್ಟುಕೊಳ್ಳತಕ್ಕದ್ದು ಹಾಗೂ ಅದರ ಪ್ರತಿಯನ್ನು ಸಂಬಂಧಪಟ್ಟ ನೌಕರನಿಗೆ ನೀಡತಕ್ಕದ್ದು.

(2) ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಕಾರ್ಯವಿಧಾನಗಳ ಮೂಲಕ ನಿಯಂತ್ರಿಸತಕ್ಕದ್ದು.

(3) ಕರಾರಿನಿಂದಾಗಿ ವಿಶ್ವವಿದ್ಯಾಲಯ ಮತ್ತು ನೌಕರನ ಮಧ್ಯದಲ್ಲಿ ಉದ್ಭವಿಸಬಹುದಾದ ಯಾವುದೇ ವಿವಾದವನ್ನು, ಲಿಖಿತ ಕರಾರಿನಲ್ಲಿ ಉಪಬಂಧಿಸಿದ ವಿಧಾನದಲ್ಲಿ ಹಾಗೂ ಪರಿನಿಯಮಗಳ ಅನುಸಾರವಾಗಿ ಪರಿಹರಿಸತಕ್ಕದ್ದು.

40. **ಮೇಲ್ಮನವಿ ಹಕ್ಕು**.- ವಿಶ್ವವಿದ್ಯಾಲಯವು ತನ್ನ ನೌಕರರ ಅಥವಾ ವಿದ್ಯಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡ ಸಂದರ್ಭದಲ್ಲಿ, ಬಾಧಿತ ನೌಕರ ಅಥವಾ ವಿದ್ಯಾರ್ಥಿಗಳು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಅಂಥ ಪ್ರಾಧಿಕಾರಕ್ಕೆ ಮೇಲ್ಮನವಿ ಸಲ್ಲಿಸುವ ಹಕ್ಕನ್ನು ಹೊಂದಿರತಕ್ಕದ್ದು.

41. **ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿ**.- ವಿಶ್ವವಿದ್ಯಾಲಯವು, ತನ್ನ ನೌಕರರ ಪ್ರಯೋಜನಕ್ಕಾಗಿ, ಪರಿನಿಯಮಗಳು ಮತ್ತು ಜಾರಿಯಲ್ಲಿರುವ ಕಾನೂನುಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿಯನ್ನು ರಚಿಸತಕ್ಕದ್ದು ಹಾಗೂ ಅಂಥ ವಿಮಾ ಯೋಜನೆಗಳನ್ನು ಒದಗಿಸತಕ್ಕದ್ದು.

42. **ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು**.- ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಇತರ ಸಂಸ್ಥೆಯ ಸದಸ್ಯನಾಗಿ ಯಾವೊಬ್ಬ ವ್ಯಕ್ತಿಯು ಸೂಕ್ತವಾಗಿ ಆಯ್ಕೆಯಾಗಿದ್ದಾನೆಯೇ ಅಥವಾ ನೇಮಕಗೊಂಡಿದ್ದಾನೆಯೇ ಅಥವಾ ಅದಕ್ಕೆ ಅರ್ಹನಾಗಿದ್ದಾನೆಯೇ ಎಂಬ ಯಾವುದೇ ಪ್ರಶ್ನೆ ಉದ್ಭವಿಸಿದರೆ, ಆ ವಿಷಯವನ್ನು ತೀರ್ಮಾನಕ್ಕಾಗಿ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**43. ಸಮಿತಿಗಳ ರಚನೆ.**- 22ನೇ ಪ್ರಕರಣದಲ್ಲಿ ನಮೂದಿಸಿದ ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಅಧಿಕಾರವನ್ನು ಹೊಂದಿರುವ ಅಂಥ ಸದಸ್ಯರನ್ನು ಒಳಗೊಂಡ ಅಂಥ ಪ್ರಾಧಿಕಾರದ ಒಂದು ಸಮಿತಿಯನ್ನು ರಚಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**44. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು.**- ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಂಸ್ಥೆಯ ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ಪೈಕಿ ಯಾವುದೇ ಸ್ಥಾನವು ಆಕಸ್ಮಿಕವಾಗಿ ಖಾಲಿಯಾದರೆ, ಯಾರ ಸ್ಥಾನವು ಖಾಲಿಯಾಗಿ ತುಂಬಬೇಕಾಗಿ ಬಂದಿದೆಯೋ ಆ ಸದಸ್ಯನನ್ನು ಯಾವ ರೀತಿಯಲ್ಲಿ ಆರಿಸಲಾಗಿತ್ತೋ ಅದೇ ರೀತಿಯಲ್ಲಿ ಹೊಸ ಸದಸ್ಯನನ್ನು ಆರಿಸಿ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ಖಾಲಿ ಸ್ಥಾನವನ್ನು ಭರ್ತಿ ಮಾಡಿದ ವ್ಯಕ್ತಿಯು ಆತನು ಯಾವ ಸದಸ್ಯನ ಸ್ಥಾನದಲ್ಲಿ ಭರ್ತಿಯಾಗಿರುವನೋ ಆ ಸದಸ್ಯನು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯನಾಗಿ ಉಳಿಯುತ್ತಿದ್ದ ಬಾಕಿ ಅವಧಿಯವರೆಗೆ ಮಾತ್ರ ಸದಸ್ಯನಾಗಿರತಕ್ಕದ್ದು.

**45. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.**- ಈ ಅಧಿನಿಯಮ ಅಥವಾ ಪರಿನಿಯಮಗಳು ಅಥವಾ ನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ವಿಶ್ವವಿದ್ಯಾಲಯದ ಯಾವೊಬ್ಬ ಅಧಿಕಾರಿ ಅಥವಾ ಇತರ ನೌಕರರ ವಿರುದ್ಧ ಯಾವುದೇ ದಾವೆ ಅಥವಾ ಇತರ ಕಾನೂನು ವ್ಯವಹರಣೆಗಳನ್ನು ನಡೆಸಲು ಅವಕಾಶ ಇರತಕ್ಕದ್ದಲ್ಲ.

**46. ತಾತ್ಕಾಲಿಕ ಉಪಬಂಧಗಳು.**- ಈ ಅಧಿನಿಯಮ ಮತ್ತು ಪರಿನಿಯಮಗಳ ಯಾವುದೇ ಇತರ ಉಪಬಂಧಗಳಲ್ಲಿ ಏನೇ ಇದ್ದರೂ,-

(i) ಮೊದಲ ಕುಲಪತಿ ಮತ್ತು ಸಹಕುಲಪತಿ, ಯಾರಾದರೂ ಇದ್ದರೆ, ಅವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(ii) ಮೊದಲ ಕುಲಸಚಿವರನ್ನು ಮತ್ತು ಮೊದಲ ಹಣಕಾಸು ಅಧಿಕಾರಿಯವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು; ಮತ್ತು

(iii) ಮೊದಲ ವ್ಯವಸ್ಥಾಪನ ಮಂಡಳಿ, ಮೊದಲ ಹಣಕಾಸು ಸಮಿತಿ, ಮೊದಲ ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಹಾಗೂ ಮೊದಲ ಶೈಕ್ಷಣಿಕ ಪರಿಷತ್ತನ್ನು ಕುಲಾಧಿಪತಿಯವರು ರಚಿಸತಕ್ಕದ್ದು.

**47. ಶಾಶ್ವತ ಶಾಸನಬದ್ಧ ದತ್ತಿ ನಿಧಿ.**- (1) ವಿಶ್ವವಿದ್ಯಾಲಯವು, ಕನಿಷ್ಠ ಇಪ್ಪತ್ತೈದು ಕೋಟಿ ರೂಪಾಯಿಗಳನ್ನುಳ್ಳ ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು ಇದರ ಪೈಕಿ ಕನಿಷ್ಠ ಹದಿನೈದು ಕೋಟಿ ರೂಪಾಯಿಗಳು ನಗದು ರೂಪದಲ್ಲಿ ಮತ್ತು ಇನ್ನುಳಿದದ್ದು ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ಇರತಕ್ಕದ್ದು ಮತ್ತು ಇದನ್ನು ತಾನಾಗಿಯೆ ಹೆಚ್ಚಿಸಬಹುದಾಗಿದ್ದು ಆದರೆ ಕಡಿಮೆ ಮಾಡತಕ್ಕದ್ದಲ್ಲ:

ಪರಂತು, ಬೆಂಗಳೂರು ಅಥವಾ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊರಗಿರುವ ವಿಶ್ವವಿದ್ಯಾಲಯದ ಸಂದರ್ಭದಲ್ಲಿ ಕನಿಷ್ಠ ಹತ್ತು ಕೋಟಿ ರೂಪಾಯಿಗಳು ನಗದು ರೂಪದಲ್ಲಿರತಕ್ಕದ್ದು ಮತ್ತು ಉಳಿದ ಐದು ಕೋಟಿ ರೂಪಾಯಿಗಳು ಬ್ಯಾಂಕ್ ಗ್ಯಾರಂಟಿಯ ರೂಪದಲ್ಲಿರತಕ್ಕದ್ದು.

(2) ವಿಶ್ವವಿದ್ಯಾಲಯವು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಹಣವನ್ನು ಹೂಡಲು ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯವು ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಗೆ ವರ್ಗಾವಣೆ ಮಾಡಬಹುದು. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನೂ ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(4) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಿದ ವರಮಾನದ ಶೇಕಡಾ ಎಪ್ಪತ್ತೈದರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೆಕಡಾ ಇಪ್ಪತ್ತೈದರಷ್ಟನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಯಲ್ಲಿ ಪುನ: ತೊಡಗಿಸತಕ್ಕದ್ದು.

**48. ವಿಶ್ವವಿದ್ಯಾಲಯದ ದತ್ತಿ ನಿಧಿ.**- (1) ವಿಶ್ವವಿದ್ಯಾಲಯವು, ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ನಿಧಿಗಳನ್ನು ಒಳಗೊಂಡ ವಿಶ್ವವಿದ್ಯಾಲಯದ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದು ಕಾಲಕಾಲಕ್ಕೆ ಸ್ವೀಕರಿಸಬಹುದಾದ ದೇಣಿಗೆಗಳು ಮತ್ತು ಇತರ ನಿಧಿಗಳನ್ನು ಒಳಗೊಂಡಿರತಕ್ಕದ್ದು.

(2) ವಿಶ್ವವಿದ್ಯಾಲಯವು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ವಿಶ್ವವಿದ್ಯಾಲಯದ ದತ್ತಿನಿಧಿಯನ್ನು ಹೂಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯ ದತ್ತಿ ನಿಧಿಯು, ವಿಶ್ವವಿದ್ಯಾಲಯವು ತನ್ನ ಸಾಮಾಜಿಕ ಧ್ಯೇಯೋದ್ದೇಶಗಳನ್ನು ನೆರವೇರಿಸುವ ಸಂದರ್ಭದಲ್ಲಿ ಮತ್ತು/ಅಥವಾ ಮುಂಗಾಣದ ಸನ್ನಿವೇಶದಲ್ಲಿ ಉದ್ಭವಿಸಬಹುದಾದ ಹಣಕಾಸು ಸವಾಲುಗಳಿಂದ ತನ್ನನ್ನು ರಕ್ಷಿಸಿಕೊಳ್ಳುವುದಕ್ಕಾಗಿ, ಸ್ವಇಚ್ಛೆಯಿಂದ ನಿರ್ವಹಿಸಿಕೊಂಡು ಬರಲು ಮತ್ತು ಜವಾಬ್ದಾರಿಯಿಂದ ಹಣ ಹೂಡಿಕೆ ಮಾಡಲು ಇಚ್ಛೆಯುಳ್ಳವರಾಗಿ ಸ್ವಯಂ ವಿಧಿಸಿಕೊಂಡ ನಿಧಿಯಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಗೆ ವರ್ಗಾಯಿಸಬಹುದು. ವಿಶ್ವವಿದ್ಯಾಲಯದ ಸಮಾಪಣೆಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನು ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(5) ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಬರುವ ವರಮಾನದ ಶೇಕಡಾ ಎಂಭತ್ತರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸದ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತರಷ್ಟನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**49. ಸಾಮಾನ್ಯ ನಿಧಿ.**- (1) ವಿಶ್ವವಿದ್ಯಾಲಯವು, ಒಂದು ಸಾಮಾನ್ಯ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯವು ವಿಧಿಸಬಹುದಾದ ಎಲ್ಲಾ ಶುಲ್ಕಗಳು;

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವುದೇ ಇತರ ಮೂಲದಿಂದ ಸ್ವೀಕರಿಸಲಾದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ದೇಣಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು ಅಥವಾ ವಂತಿಗೆಗಳು;

(2) ಸಾಮಾನ್ಯ ನಿಧಿಗೆ ಜಮಾ ಮಾಡುವ ನಿಧಿಗಳನ್ನು ವಿಶ್ವವಿದ್ಯಾಲಯದ ಎಲ್ಲಾ ಆವರ್ತಕ ವೆಚ್ಚಗಳನ್ನು ಭರಿಸಲು ಉಪಯೋಗಿಸಕೊಳ್ಳತಕ್ಕದ್ದು.

50. **ಅಭಿವೃದ್ಧಿ ನಿಧಿ**.- (1) ವಿಶ್ವವಿದ್ಯಾಲಯವು, ಒಂದು ಅಭಿವೃದ್ಧಿ ನಿಧಿಯನ್ನು ಸಹ ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:-

(i) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ವಿದ್ಯಾರ್ಥಿಗಳಿಂದ ವಿಧಿಸಬಹುದಾದ ಅಭಿವೃದ್ಧಿ ಶುಲ್ಕಗಳು;

(ii) ವಿಶ್ವವಿದ್ಯಾಲಯದ ಅಭಿವೃದ್ಧಿಯ ಉದ್ದೇಶಗಳಿಗಾಗಿ ಯಾವುದೇ ಇತರ ಮೂಲಗಳಿಂದ ಸ್ವೀಕರಿಸಿದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ವಂತಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು ಅಥವಾ ವಂತಿಗೆಗಳು; ಮತ್ತು

(v) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಲಾದ ಎಲ್ಲಾ ವರಮಾನಗಳು.

(2) ಅಭಿವೃದ್ಧಿ ನಿಧಿಗೆ ಕಾಲಕಾಲಕ್ಕೆ ಜಮಾ ಮಾಡಿದ ನಿಧಿಯನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಉಪಯೋಗಿಸಕೊಳ್ಳತಕ್ಕದ್ದು.

(3) ಯಾವುದೇ ಸಂದರ್ಭಗಳಲ್ಲಿಯೂ ವಿಶ್ವವಿದ್ಯಾಲಯದ ನಿಧಿಯನ್ನು ಪ್ರಾಯೋಜಕ ಸಂಸ್ಥೆಯ ಇತರ ಶೈಕ್ಷಣಿಕ ಸಂಸ್ಥೆಗಳಿಗೆ ವರ್ಗಾಯಿಸತಕ್ಕದ್ದಲ್ಲ.

51. **ನಿಧಿಗಳ ನಿರ್ವಹಣೆ**.- 47, 48, 49 ಮತ್ತು 50ನೇ ಪ್ರಕರಣಗಳಡಿಯಲ್ಲಿ ಸ್ಥಾಪಿಸಲಾದ ನಿಧಿಗಳನ್ನು ಪ್ರಬಂಧಕ ಮಂಡಳಿಯ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ನಿಯಂತ್ರಿಸತಕ್ಕದ್ದು ಹಾಗೂ ನಿರ್ವಹಿಸತಕ್ಕದ್ದು.

52. **ವಾರ್ಷಿಕ ವರದಿ**.- (1) ವಿಶ್ವವಿದ್ಯಾಲಯದ ವಾರ್ಷಿಕ ವರದಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ಅದರ ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಪ್ರಬಂಧಕ ಮಂಡಳಿಯು ವಾರ್ಷಿಕ ವರದಿಯನ್ನು ತನ್ನ ಸಭೆಯಲ್ಲಿ ಪರಿಗಣಿಸತಕ್ಕದ್ದು ಹಾಗೂ ಅದನ್ನು ಮಾರ್ಪಾಡುಗಳೊಡನೆ ಅಥವಾ ಮಾರ್ಪಾಡುಗಳಿಲ್ಲದೆ ಅನುಮೋದಿಸಬಹುದು.

(3) ಪ್ರಬಂಧಕ ಮಂಡಳಿಯು ಸೂಕ್ತವಾಗಿ ಅನುಮೋದಿಸಿದ ವಾರ್ಷಿಕ ವರದಿಯ ಒಂದು ಪ್ರತಿಯನ್ನು ಪ್ರತಿವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ಡಿಸೆಂಬರ್ 31ಕ್ಕೆ ಮೊದಲು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

53. **ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ**.- (1) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕ ಪತ್ರ ಮತ್ತು ಜಮಾ ಖರ್ಚು ಪಟ್ಟಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ತಯಾರಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯಕ್ಕೆ ಎಲ್ಲಾ ಮೂಲಗಳಿಂದ ಪ್ರಾಪ್ತವಾಗುವ ಅಥವಾ

ಸ್ವೀಕರಿಸಲಾಗುವ ಎಲ್ಲಾ ನಿಧಿಗಳು ಹಾಗೂ ವಿತರಿಸಿದ ಅಥವಾ ಸಂದಾಯ ಮಾಡಿದ ಎಲ್ಲಾ ಮೊಬಲಗುಗಳನ್ನು ವಿಶ್ವವಿದ್ಯಾಲಯವು ನಿರ್ವಹಿಸುವ ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕಪತ್ರಗಳನ್ನು ಪ್ರತಿ ವರ್ಷವೂ ಭಾರತದ ಚಾರ್ಟೆಡ್ ಅಕೌಂಟೆಂಟ್‌ಗಳ ಸಂಸ್ಥೆಯ ಸದಸ್ಯರಾಗಿರುವ ಒಬ್ಬ ಲೆಕ್ಕಪರಿಶೋಧಕರಿಂದ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಲೆಕ್ಕಪರಿಶೋಧನಾ ವರದಿಯೊಡನೆ, ಪ್ರತಿ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ನವೆಂಬರ್ 30ಕ್ಕೆ ಮೊದಲು ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(4) ವಾರ್ಷಿಕ ಲೆಕ್ಕಪತ್ರಗಳು, ಜಮಾಖರ್ಚು ಪಟ್ಟಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಪ್ರಬಂಧಕ ಮಂಡಳಿಯು ತನ್ನ ಸಭೆಯಲ್ಲಿ ಪರ್ಯಾಲೋಚಿಸತಕ್ಕದ್ದು ಮತ್ತು ಪ್ರಬಂಧಕ ಮಂಡಳಿಯು ಅದನ್ನು ತನ್ನ ಅಭಿಪ್ರಾಯಗಳೊಡನೆ ಸಂದರ್ಶಕರಿಗೆ ಹಾಗೂ ಸರ್ಕಾರಕ್ಕೆ ಪ್ರತಿ ವರ್ಷದ ಡಿಸೆಂಬರ್ 31ಕ್ಕೆ ಮೊದಲು ಕಳುಹಿಸತಕ್ಕದ್ದು.

(5) ಲೆಕ್ಕಪರಿಶೋಧಕರ ವರದಿಯಲ್ಲಿ ಯಾವುದೇ ಆಕ್ಷೇಪಣೆಗಳು ಮತ್ತು ಸಲಹೆಗಳು ಇದ್ದ ಸಂದರ್ಭದಲ್ಲಿ, ತಪ್ಪುಗಳನ್ನು ಸರಿಪಡಿಸಲು, ರಾಜ್ಯ ಸರ್ಕಾರವು ವಿಶ್ವವಿದ್ಯಾಲಯಕ್ಕೆ ನಿರ್ದೇಶನಗಳನ್ನು ಹೊರಡಿಬಹುದು ಮತ್ತು ಅಂಥ ನಿರ್ದೇಶನಗಳು ವಿಶ್ವವಿದ್ಯಾಲಯದ ಮೇಲೆ ಬಂಧನಕಾರಿಯಾಗಿರತಕ್ಕದ್ದು.

54. **ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ.-** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಮಿತಿಯ ಯಾವುದೇ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ ಅಥವಾ ಗೊತ್ತುವಳಿಯು ಅಥವಾ ವಿಶ್ವವಿದ್ಯಾಲಯದ ಸ್ವಾಧೀನದಲ್ಲಿರುವ ಇತರ ದಾಖಲೆಗಳು ಅಥವಾ ವಿಶ್ವವಿದ್ಯಾಲಯವು ಯುಕ್ತವಾಗಿ ನಿರ್ವಹಿಸುವ ಯಾವುದೇ ರಿಜಿಸ್ಟರ್‌ನಲ್ಲಿಯ ಯಾವುದೇ ನಮೂದುಗಳ ಪ್ರತಿಯನ್ನು, ಅದರ ಮೇಲೆ ಕುಲಸಚಿವರು ಪ್ರಮಾಣೀಕರಿಸಿದ್ದರೆ, ಅದನ್ನು ಅಂಥ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ, ಗೊತ್ತುವಳಿ ಅಥವಾ ದಾಖಲೆ ಅಥವಾ ರಿಜಿಸ್ಟರ್‌ನಲ್ಲಿ ಇರುವ ನಮೂದನ್ನು ಮೇಲ್ನೋಟದ ಸಾಕ್ಷ್ಯವೆಂಬುದಾಗಿ ಸ್ವೀಕರಿಸತಕ್ಕದ್ದು ಮತ್ತು ವಿಷಯಗಳ ಸಾಕ್ಷಿಯಾಗಿ ಅಂಗೀಕರಿಸತಕ್ಕದ್ದು ಹಾಗೂ ಮೂಲ ದಾಖಲೆಗಳನ್ನೇ ಸಲ್ಲಿಸಿದ್ದರೆ ಅದನ್ನು, ದಾಖಲಿಸಿರುವ ವಿಷಯಗಳು ಮತ್ತು ವಹಿವಾಟುಗಳ ಸಾಕ್ಷ್ಯವಾಗಿ ಅಂಗೀಕರಿಸಲಾಗುತ್ತಿತ್ತೋ, ಅದೇ ರೀತಿಯಲ್ಲಿ ಇವನ್ನೂ ಸಾಕ್ಷ್ಯವಾಗಿ ಅಂಗೀಕರಿಸತಕ್ಕದ್ದು.

55. **ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ.-** ರಾಜ್ಯಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಥವಾ ಅದರಲ್ಲಿ ಇರುವ ಯಾವುವೇ ಉಪಬಂಧಗಳನ್ನು ಅಥವಾ ಅದರಡಿಯಲ್ಲಿ ರಚಿಸಿದ ಯಾವುವೇ ನಿಯಮಗಳು ಅಥವಾ ಆದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿರ್ದೇಶನ ನೀಡುವುದು ಅವಶ್ಯವೆಂದು ಅಥವಾ ಉಚಿತವೆಂದು ಅಭಿಪ್ರಾಯಪಟ್ಟಲ್ಲಿ ಅದು ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ ಅಥವಾ ಸಂದರ್ಭಾನುಸಾರವಾಗಿ ವ್ಯವಸ್ಥಾಪನಾ ಮಂಡಳಿಯು ಅಂಥ ಪ್ರತಿಯೊಂದು ನಿರ್ದೇಶನವನ್ನು ಪಾಲಿಸತಕ್ಕದ್ದು.

56. **ದಂಡಗಳು.-** (1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿತವಾದ ನಿಯಮಗಳು ಉಪಬಂಧಗಳನ್ನು ಅಥವಾ ಯಾವುದೇ ಪರೀಕ್ಷಾ ವಿಷಯಗಳನ್ನು ಅಥವಾ ಪದವಿಗಳನ್ನು ನೀಡುವುದಕ್ಕೆ ಅಥವಾ ಅಂಕಪಟ್ಟಿಗಳನ್ನು ನೀಡುವುದಕ್ಕೆ ಸಂಬಂಧಪಟ್ಟ

ವಿಷಯಗಳಲ್ಲಿ ಉಲ್ಲಂಘನೆಗಳನ್ನು ಮಾಡುವ ಯಾವೊಬ್ಬ ವ್ಯಕ್ತಿಯು, ಅಪರಾಧ ನಿರ್ಣಯವಾದ ಮೇಲೆ, ಐವತ್ತು ಸಾವಿರ ರೂಪಾಯಿಗಳಿಗೆ ಕಡಿಮೆಯಲ್ಲದ ಆದರೆ ಹತ್ತು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಆರು ತಿಂಗಳ ಅವಧಿಗಿಂತ ಕಡಿಮೆಯಲ್ಲದ ಆದರೆ ಎರಡು ವರ್ಷಗಳ ಅವಧಿಯವರೆಗೆ ವಿಸ್ತರಿಸಬಹುದಾದ ಕಾರಾವಾಸದಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು:

ಪರಂತು, ಅಪರಾಧವನ್ನು ಎಸಗುವಲ್ಲಿ ವಿಶ್ವವಿದ್ಯಾಲಯವೂ ಸಹ ಒಳಗೊಂಡಿರುವಲ್ಲಿ, ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಈ ಅಧಿನಿಯಮದ ಅಡಿಯಲ್ಲಿ ಮಂಜೂರು ಮಾಡಲಾದ ಅನುಮತಿ ಪತ್ರವನ್ನು ಹಿಂತೆಗೆದುಕೊಳ್ಳತಕ್ಕದ್ದು.

(2) ಈ ಪ್ರಕರಣದ ಅಡಿಯಲ್ಲಿಯ ದಂಡವನ್ನು ಇತರ ಯಾವುದೇ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಲಾದ ದಂಡಕ್ಕೆ ಬಾಧಕವಾಗದಂತೆ ವಿಧಿಸಬಹುದು.

57. **ಪ್ರವೇಶಿಸುವ ಮತ್ತು ಪರಿಶೋಧಿಸುವ ಅಧಿಕಾರ.**- ಈ ಉದ್ದೇಶಕ್ಕಾಗಿ, ರಾಜ್ಯಸರ್ಕಾರದಿಂದ ಪ್ರಾಧಿಕೃತಗೊಂಡ 'ಎ' ಸಮೂಹದ ಅಧಿಕಾರಿ ದರ್ಜೆಗಿಂತ ಕಡಿಮೆಇಲ್ಲದ ದರ್ಜೆಯ ಯಾವೊಬ್ಬ ಅಧಿಕಾರಿಯು, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಶನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ 37) ಅಡಿಯಲ್ಲಿ ನಿರ್ದಿಷ್ಟಪಡಿಸಿರಬಹುದಾದ ಅಂಥ ಷರತ್ತುಗಳಿಗೆ ಒಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ, ಆ ಅಧಿನಿಯಮದ 9ನೇ ಪ್ರಕರಣದ ಅಡಿಯಲ್ಲಿ ಉಪಬಂಧಿಸಲಾದಂತಹವೇ ಅಧಿಕಾರಗಳನ್ನು ಚಲಾಯಿಸಲು ಮತ್ತು ಪ್ರಕಾರ್ಯಗಳನ್ನು ನೆರವೇರಿಸಲು ಅಧಿಕೃತನಾದ ಅಧಿಕಾರಿ ಎಂಬುದಾಗಿ ಭಾವಿಸತಕ್ಕದ್ದು.

58. **ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ನಿರ್ದೇಶನವನ್ನು ನೀಡುವ ಅಧಿಕಾರ.**- (1) ವಿಶ್ವವಿದ್ಯಾಲಯವು ತನ್ನ ರಚನೆ ಅಥವಾ ನಿಗಮನವನ್ನು ನಿಯಂತ್ರಿಸುವ ಕಾನೂನಿಗೆ ಅನುಸಾರವಾಗಿ ತನ್ನ ಸಮಾಪನವನ್ನು ಉದ್ದೇಶಿಸಿದ್ದಲ್ಲಿ, ಅದು ಕನಿಷ್ಠ ಆರು ತಿಂಗಳ ಲಿಖಿತ ಪೂರ್ವ ಸೂಚನೆಯನ್ನು (ನೋಟಿಸು) ಸರ್ಕಾರಕ್ಕೆ ನೀಡತಕ್ಕದ್ದು.

(2) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಈ ಕೆಳಗಿನವುಗಳ ಬಗ್ಗೆ, ಎಂದರೆ:-

(i) ಪದವಿಯನ್ನು ನೀಡುವುದಕ್ಕಾಗಿ ಬೋಧನೆಯ ಗುಣಮಟ್ಟ;

(ii) ಶಿಕ್ಷಣದ ಗುಣಮಟ್ಟ;

(iii) ಉನ್ನತ ಶಿಕ್ಷಣದ ವ್ಯಾಪಾರೀಕರಣವನ್ನು ತಡೆಗಟ್ಟುವುದು;

(iv) ಅಧಿನಿಯಮದ ಉಪಬಂಧಗಳ ಉಲ್ಲಂಘನೆಯ ಬಗ್ಗೆ, ಯಾವುದಾದರೂ ಇದ್ದಲ್ಲಿ,

– ಇವುಗಳ ಬಗ್ಗೆ ನಿಯತಕಾಲಿಕ ಪರಿವೀಕ್ಷಣೆಯನ್ನು ನಡೆಸತಕ್ಕದ್ದು ಮತ್ತು ಸರ್ಕಾರಕ್ಕೆ ವರದಿಯನ್ನು ಕಳುಹಿಸತಕ್ಕದ್ದು.

(3) ದುರ್ವ್ಯವಹರಣೆ, ದುರಾಡಳಿತ ಮತ್ತು ಅಶಿಸ್ತು ಆಗಿದೆ ಎಂಬುದನ್ನು ಗುರುತಿಸಿದರೆ, ಸರ್ಕಾರವು, ವಿಶ್ವವಿದ್ಯಾಲಯದ ಆಡಳಿತವರ್ಗದವರಿಗೆ ಆಡಳಿತವನ್ನು ಸರಿಪಡಿಸಬೇಕೆಂದು ನಿರ್ದೇಶನಗಳನ್ನು ನೀಡತಕ್ಕದ್ದು. ನಿಯಮಿಸಬಹುದಾದ ಅಂಥ ಅವಧಿಯೊಳಗೆ ಆ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ

ಕ್ರಮವನ್ನು (ಕೋರ್ಸ್‌) ಸಮಾಪನಗೊಳಿಸುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುವ ಹಕ್ಕು ಸರ್ಕಾರದಲ್ಲಿ ನಿಹಿತವಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್‌) ಸಮಾಪನಗೊಳಿಸುವ ವಿಧಾನವು, ಸರ್ಕಾರವು ಈ ಸಂಬಂಧದಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು:

ಪರಂತು, ವಿಶ್ವವಿದ್ಯಾಲಯವು ತನ್ನ ಕಾರಣಗಳನ್ನು ಹೇಳಿಕೊಳ್ಳಲು ಸಮಂಜಸ ಅವಕಾಶಗಳನ್ನು ನೀಡಿದ ಹೊರತು ಅಂಥ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

(5) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೋಟಿಸನ್ನು ಸ್ವೀಕರಿಸಿದ ಮೇಲೆ, ಸರ್ಕಾರವು ಸಂಬಂಧಿಸಿದ ನಿಯಂತ್ರಣಾ ಪ್ರಾಧಿಕಾರದೊಡನೆ ಸಮಾಲೋಚಿಸಿ, ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ಅಥವಾ ವ್ಯಾಸಂಗ ಕ್ರಮವನ್ನು ಪರಿಸಮಾಪನಗೊಳಿಸಲು ಉದ್ದೇಶಿಸಿದ ದಿನಾಂಕದಿಂದ, ವಿಶ್ವವಿದ್ಯಾಲಯದಲ್ಲಿ ನಿಯತ ವ್ಯಾಸಂಗ ಕ್ರಮಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕೊನೆಯ ತಂಡ (ಬ್ಯಾಚ್) ತನ್ನ ವ್ಯಾಸಂಗ ಕ್ರಮವನ್ನು ಮುಗಿಸುವವರೆಗೆ ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು.

59. **ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು.**- (1) 58ನೇ ಪ್ರಕರಣದ (5)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ಅದರ ಆಡಳಿತಾತ್ಮಕ ವೆಚ್ಚಗಳನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಭರಿಸತಕ್ಕದ್ದು.

(2) ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ವಿಶ್ವವಿದ್ಯಾಲಯದ ವೆಚ್ಚವನ್ನು ಭರಿಸಲು 47, 48, 49, ಮತ್ತು 50ನೇ ಪ್ರಕರಣಗಳ ಅಡಿಯಲ್ಲಿ ಉಲ್ಲೇಖಿಸಲಾದ ನಿಧಿಯು ಸಾಕಷ್ಟು ಇಲ್ಲದಿದ್ದಲ್ಲಿ, ಅಂಥ ವೆಚ್ಚವನ್ನು ಸರ್ಕಾರವು, ವಿಶ್ವವಿದ್ಯಾಲಯದ ಸ್ವತ್ತುಗಳು ಮತ್ತು ಆಸ್ತಿಗಳನ್ನು ವಿಲೇ ಮಾಡುವ ಮೂಲಕ ಭರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಸಮಾಪನೆಯು ದುರ್ವ್ಯವಹರಣೆ ಅಥವಾ ದುರಾಡಳಿತದ ಕಾರಣಗಳಿಗಾಗಿ ಆಗಿದ್ದರೆ, ಸರ್ಕಾರವು ಅಂಥ ದುರ್ವ್ಯವಹಾರಕ್ಕೆ ಅಥವಾ ದುರಾಡಳಿತಕ್ಕೆ ಹೊಣೆಯಾಗಿರುವ ವ್ಯಕ್ತಿಗಳನ್ನು ಗುರುತಿಸುವ ಮತ್ತು ಅವರ ಮೇಲೆ ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ದಂಡನೆಯನ್ನು ವಿಧಿಸಲು ಸ್ವತಂತ್ರವಾಗಿರತಕ್ಕದ್ದು.

60. **ತೊಂದರೆಗಳ ನಿವಾರಣೆಗೆ ಅಧಿಕಾರ.**- (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಅಥವಾ ಆದೇಶದ ಮೂಲಕ ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಐದು ವರ್ಷಗಳು ಮುಕ್ತಾಯವಾದ ತರುವಾಯ ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಅಧಿಸೂಚನೆ ಅಥವಾ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

61. **ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ.-** (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಉಭಯ ಸದನಗಳು ಒಪ್ಪಿದರೆ ತದನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ದತಿಯು ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವನ್ನು ಉಂಟುಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಕೆ.ದ್ವಾರಕನಾಥ್ ಬಾಬು)**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ

**DEPARTMENT OF PARLIAMENTARY AFFAIRS AND LEGISLATION SECRETARIAT**

**NOTIFICATION**

**NO. DPAL 65 SHASANA 2020, BENGALURU, DATED: 16.04.2021**

ಭಾರತ ಸಂವಿಧಾನದ ಅನುಚ್ಛೇಧ 348ರ ಖಂಡ (3)ರ ಅಡಿಯಲ್ಲಿ ರಾಜ್ಯಪಾಲರಿಂದ ಅಧಿಕೃತಗೊಳಿಸಿದ ಶ್ರೀ ಜಗದ್ಗುರು ಮುರುಘರಾಜೇಂದ್ರ ವಿಶ್ವವಿದ್ಯಾಲಯ ಅಧಿನಿಯಮ, 2020 (2021ರ ಕರ್ನಾಟಕ ಅಧಿನಿಯಮ ಸಂಖ್ಯೆ: 21)ರ ಭಾಷಾಂತರವನ್ನು ಅಧಿಕೃತ ಆಂಗ್ಲ ಪಠ್ಯವೆಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ (ಭಾಗ-IV) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ,-

**KARNATAKA ACT NO. 21 OF 2021**

(First Published in the Karnataka Gazette Extra-ordinary on the 16th day of April 2021)

# SRI JAGADHGURU MURUGARAJENDRA UNIVERSITY ACT, 2020

(Received the assent of the Governor on the 15th day of April 2021)

An Act to establish and incorporate in the State of Karnataka a University of unitary nature in private sector by the Sri Jagadhguru Murugarajendra Vidhyapeetha (R) Chitradurga to promote and undertake the advancement of University education in General, Technical, Health, Management, Law, Life Sciences and for the matters connected therewith or incidental thereto.

Whereas it is expedient to establish and incorporate in the State of Karnataka a University of unitary nature in private sector by the Sri Jagadhguru Murugarajendra Vidhyapeetha (R) Chitradurga to promote and undertake the advancement of University education in General, Technical, Health, Management, Law, Life Sciences and for the matters connected therewith or incidental thereto for the purposes hereinafter appearing;

Be it enacted by the Karnataka State Legislature in the seventy first year of the Republic of India as follows:-

## CHAPTER-I
## PRELIMINARY

**1. Short title, extent and commencement.-** (1) This Act may be called the Sri Jagadhguru Murugarajendra University Act, 2020.

(2) It extends to the whole of the State of Karnataka.

(3) It shall come into force on such date as the State Government may, by notification, in the official Gazette, appoint.

**2. Definitions.-** In this Act, unless the context otherwise requires,-

(a) "Academic Council" means the Academic Council of the University as specified in section 25;

(b) "Agenda Matters" means all the matters and businesses to be designated in the Statutes each of which can be either included in the Agenda or be taken up for discussion and decision at a meeting of the Board of Governors or the Board of Management or Academic Council or other Authorities of the University or any Committees, as the case may be, only subject to the prior written approval of the Chancellor, consenting to the passing of such matters and businesses at such a meeting;

(c) "Board of Governors" means the Board of Governors of the University as specified in section 23;

(d) "Board of Management" means the Board of Management of the University as specified in section 24;

(e) "Chancellor", "Vice-Chancellor", "Pro Vice-Chancellor" means respectively the Chancellor, Vice Chancellor and Pro Vice Chancellor of the University;

(f) "Campus" means a campus established and maintained by the University situated within the State;

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೪ಎ<br>Part – IV A | ಬೆಂಗಳೂರು, ಶುಕ್ರವಾರ, ೧೬, ಏಪ್ರಿಲ್, ೨೦೨೧ (ಚೈತ್ರ, ೨೬, ಶಕವರ್ಷ, ೧೯೪೩)<br>BENGALURU, FRIDAY, 16, APRIL, 2021 (CHAITHRA, 26, SHAKAVARSHA, 1943 | ಸಂ. ೪೩೪<br>No. 434 |
|---|---|---|


## ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ ಸಚಿವಾಲಯ

## ಅಧಿಸೂಚನೆ

**ಸಂಖ್ಯೆ: ಸಂವ್ಯಶಾಇ 04 ಶಾಸನ 2021, ದಿನಾಂಕ: 16.04.2021**

ನ್ಯೂ ಹೊರೈಜನ್ ವಿಶ್ವವಿದ್ಯಾಲಯ ವಿಧೇಯಕ, 2021, ಇದಕ್ಕೆ 2021ರ ಏಪ್ರಿಲ್ ತಿಂಗಳ 15ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2021 ರ ಕರ್ನಾಟಕ ಅಧಿನಿಯಮ ಸಂಖ್ಯೆ: 23 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ (ಭಾಗ IV) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ,-

## 2021ರ ಕರ್ನಾಟಕ ಅಧಿನಿಯಮ ಸಂಖ್ಯೆ:23

(2021 ರ ಏಪ್ರಿಲ್ ತಿಂಗಳ 16ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ನ್ಯೂ ಹೊರೈಜನ್ ವಿಶ್ವವಿದ್ಯಾಲಯ ಅಧಿನಿಯಮ, 2021

(2021ರ ಏಪ್ರಿಲ್ ತಿಂಗಳ 15ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮೋದನೆಯನ್ನು ಪಡೆಯಲಾಗಿದೆ)

ವಿಜ್ಞಾನಗಳು, ಇಂಜಿನಿಯರಿಂಗ್‌ನ ಎಲ್ಲಾ ಶಾಖೆಗಳು, ಕಲೆ, ವ್ಯವಸ್ಥಾಪನೆ, ವಾಣಿಜ್ಯ ಇವುಗಳಲ್ಲಿ ಅನ್ವಯಿಕ ವಿಶ್ವವಿದ್ಯಾಲಯ ಶಿಕ್ಷಣದ ಪ್ರಗತಿಯನ್ನು ಪ್ರೋತ್ಸಾಹಿಸಲು ಮತ್ತು ಕೈಗೊಳ್ಳಲು ಹಾಗೂ ಅದಕ್ಕೆ ಸಂಬಂಧಿಸಿದ ಅಥವಾ ಅದಕ್ಕೆ ಆನುಷಂಗಿಕವಾದ ವಿಷಯಗಳಿಗಾಗಿ ನ್ಯೂ ಹೊರೈಜನ್ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಟ್ರಸ್ಟ್‌ನ ಮೂಲಕ ಖಾಸಗಿ ವಲಯದಲ್ಲಿ ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸಲು ಒಂದು ಅಧಿನಿಯಮ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ವಿಜ್ಞಾನಗಳು, ಇಂಜಿನಿಯರಿಂಗ್‌ನ ಎಲ್ಲಾ ಶಾಖೆಗಳು, ಕಲೆ, ವ್ಯವಸ್ಥಾಪನೆ, ವಾಣಿಜ್ಯ ಇವುಗಳಲ್ಲಿ ಅನ್ವಯಿಕ ವಿಶ್ವವಿದ್ಯಾಲಯ ಶಿಕ್ಷಣದ ಪ್ರಗತಿಯನ್ನು ಪ್ರೋತ್ಸಾಹಿಸಲು ಮತ್ತು ಕೈಗೊಳ್ಳಲು ಹಾಗೂ ಅದಕ್ಕೆ ಸಂಬಂಧಿಸಿದ ಅಥವಾ ಅದಕ್ಕೆ ಆನುಷಾಂಗಿಕವಾದ ವಿಷಯಗಳಿಗಾಗಿ ನ್ಯೂ ಹೊರೈಜನ್ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಟ್ರಸ್ಟ್‌ನ ಮೂಲಕ ಖಾಸಗಿ ವಲಯದಲ್ಲಿ ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸಿ ನಿಗಮಿತಗೊಳಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತೆರಡನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

## ಅಧ್ಯಾಯ - I
## ಪ್ರಾರಂಭಿಕ

**1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ನ್ಯೂ ಹೊರೈಜನ್ ವಿಶ್ವವಿದ್ಯಾಲಯ ಅಧಿನಿಯಮ, 2021 ಎಂದು ಕರೆಯತಕ್ಕದ್ದು.

(2) ಇದು ಇಡೀ ಕರ್ನಾಟಕ ರಾಜ್ಯಕ್ಕೆ ವ್ಯಾಪ್ತವಾಗತಕ್ಕದ್ದು.

(3) ಇದು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. ಪರಿಭಾಷೆಗಳು.-** ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) ``ಶೈಕ್ಷಣಿಕ ಪರಿಷತ್ತು (ಅಕೆಡೆಮಿಕ್ ಕೌನ್ಸಿಲ್)" ಎಂದರೆ, 26ನೇ ಪ್ರಕರಣದಲ್ಲಿ ಸ್ಥಾಪಿಸಲಾದ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು;

(ಬಿ) ``ಕಾರ್ಯಸೂಚಿ ವಿಷಯಗಳು", ಎಂದರೆ, ಪರಿನಿಯಮಗಳಲ್ಲಿ ಹೆಸರಿಸಬಹುದಾದ ಮತ್ತು ಒಂದು ಸಭೆಯಲ್ಲಿ ಆ ವಿಷಯಗಳನ್ನು ಮತ್ತು ಕಲಾಪಗಳನ್ನು ಅನುಮೋದಿಸಬಹುದೆಂದು ತಮ್ಮ ಸಮ್ಮತಿ ಸೂಚಿಸಿ ಕುಲಾಧಿಪತಿಯವರು ಮುಂಚಿತವಾಗಿಯೇ ಲಿಖಿತ ಅನುಮೋದನೆಯನ್ನು ಕೊಟ್ಟಿದ್ದಾಗ ಮಾತ್ರವೇ, ಪ್ರಬಂಧಕರ ಮಂಡಳಿ ಅಥವಾ ವ್ಯವಸ್ಥಾಪನಾ ಮಂಡಳಿ ಅಥವಾ ಶೈಕ್ಷಣಿಕ ಪರಿಷತ್ತು ಅಥವಾ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರ ಅಥವಾ ಸಂದರ್ಭಾನುಸಾರವಾಗಿ ಯಾವುದೇ ಸಮಿತಿಯವರು ಕಾರ್ಯಸೂಚಿಯಲ್ಲಿ ಸೇರಿಸಬಹುದಾದ ಅಥವಾ ಸಭೆಯಲ್ಲಿ ಚರ್ಚೆಗೆ ತೆಗೆದುಕೊಂಡು ನಿರ್ಣಯವನ್ನು ಕೊಡಬಹುದಾದ ಎಲ್ಲಾ ವಿಷಯಗಳು ಮತ್ತು ಕಲಾಪಗಳು;

(ಸಿ) ``ಪ್ರಬಂಧಕರ ಮಂಡಳಿ" ಎಂದರೆ, 24ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಪ್ರಬಂಧಕರ ಮಂಡಳಿ;

(ಡಿ) ``ವ್ಯವಸ್ಥಾಪನಾ ಮಂಡಳಿ" ಎಂದರೆ 25ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿ;

(ಇ) ``ಕುಲಾಧಿಪತಿ", ``ಕುಲಪತಿ", ``ಸಹಕುಲಪತಿ" ಎಂದರೆ, ಅನುಕ್ರಮವಾಗಿ ವಿಶ್ವವಿದ್ಯಾಲಯದ ಕುಲಾಧಿಪತಿ, ಕುಲಪತಿ ಮತ್ತು ಸಹಕುಲಪತಿ;

(ಎಫ್) ``ಕ್ಯಾಂಪಸ್" ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುವ ರಾಜ್ಯದೊಳಗೆ ಇರುವ ಒಂದು ಕ್ಯಾಂಪಸ್;

(ಜಿ) ``ಸಮಿತಿಗಳು" ಎಂದರೆ, ಈ ಅಧಿನಿಯಮದಡಿಯಲ್ಲಿ ರೂಪಿಸಲಾದ ಸಮಿತಿಗಳು ಅಥವಾ ಸಂದರ್ಭಾನುಸಾರವಾಗಿ ವಿಶ್ವವಿದ್ಯಾಲಯದ ವಿವಿಧ ಕಾರ್ಯನಿರ್ವಹಕರು ರಚಿಸಿರುವ ಸಮಿತಿಗಳು ಮತ್ತು ಅದರಲ್ಲಿ ನಾಮನಿರ್ದೇಶನ ಸಮಿತಿ, ಹಣಕಾಸು ಸಮಿತಿ ಮತ್ತು ಅಂಥ ಇತರ ಸಮಿತಿಗಳು ಒಳಗೊಳ್ಳುತ್ತವೆ;

(ಎಚ್) ``ಘಟಕ ಕಾಲೇಜು" ಎಂದರೆ, ವಿಶ್ವವಿದ್ಯಾಲಯವು ಸ್ಥಾಪಿಸಿ ನಿರ್ವಹಿಸುತ್ತಿರುವ ಒಂದು ಕಾಲೇಜು ಅಥವಾ ಸಂಸ್ಥೆ;

(ಐ) ``ಹಣಕಾಸು ಸಮಿತಿ" ಎಂದರೆ, 28ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ವಿಶ್ವವಿದ್ಯಾಲಯದ ಹಣಕಾಸು ಸಮಿತಿ;

(ಜೆ) ``ಸರ್ಕಾರ" ಎಂದರೆ, ಕರ್ನಾಟಕ ಸರ್ಕಾರ;

(ಕೆ) ``ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳು" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು, ಶಿಕ್ಷಕರ ಶಿಕ್ಷಣದ ರಾಷ್ಟ್ರೀಯ ಪರಿಷತ್ತು, ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಪರಿಷತ್ತು, ವಾಸ್ತುಶಿಲ್ಪ ಪರಿಷತ್ತು ಇಂಥವುಗಳಲ್ಲಿ ಉನ್ನತ ಶಿಕ್ಷಣದಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುವಂತೆ ನೋಡಿಕೊಳ್ಳುವುದಕ್ಕಾಗಿ ಗುಣಮಟ್ಟಗಳು ಮತ್ತು ಷರತ್ತುಗಳನ್ನು ವಿಧಿಸುವುದಕ್ಕಾಗಿ, ಕೇಂದ್ರ ಸರ್ಕಾರವು ಸ್ಥಾಪಿಸಿರುವ ಒಂದು ಸಂಸ್ಥೆ ಮತ್ತು ಇದು ಸರ್ಕಾರವನ್ನು ಒಳಗೊಳ್ಳುತ್ತದೆ;

(ಎಲ್) ``ನಿಯಮಿಸಲಾದುದು" ಎಂದರೆ, ಈ ಅಧಿನಿಯಮದಡಿಯಲ್ಲಿ ಸರ್ಕಾರವು ರಚಿಸಿದ ನಿಯಮಗಳ ಮೂಲಕ ನಿಯಮಿಸಲಾದುದು;

(ಎಂ) ``ಒಂದು ಘಟಕ ಕಾಲೇಜಿಗೆ ಸಂಬಂಧಪಟ್ಟಂತೆ ಪ್ರಾಂಶುಪಾಲರು" ಎಂದರೆ, ಘಟಕ ಕಾಲೇಜಿನ ಮುಖ್ಯಸ್ಥರು ಮತ್ತು ಪ್ರಾಂಶುಪಾಲರು ಇಲ್ಲದಿದ್ದಲ್ಲಿ ಅಥವಾ ನೇಮಕವಾದ ಪ್ರಾಂಶುಪಾಲರ ಗೈರುಹಾಜರಿಯಲ್ಲಿ, ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಲು ತಾತ್ಕಾಲಿಕವಾಗಿ ನೇಮಕಗೊಂಡಿರುವ ಉಪಪ್ರಾಂಶುಪಾಲರು ಅಥವಾ ಯಾವುದೇ ಇತರ ವ್ಯಕ್ತಿಯೂ ಇದರಲ್ಲಿ ಒಳಗೊಳ್ಳುತ್ತಾ ;

(ಎನ್) ``ಕುಲಸಚಿವರು" ಎಂದರೆ, ವಿಶ್ವವಿದ್ಯಾಲಯದ ಕುಲಸಚಿವರು;

(ಒ) ``ಪ್ರಾದೇಶಿಕ ಕೇಂದ್ರ" ಎಂದರೆ, ರಾಜ್ಯದೊಳಗಿನ ಯಾವುದೇ ಪ್ರದೇಶದಲ್ಲಿನ ಅಧ್ಯಯನ ಕೇಂದ್ರಗಳ ಕಾರ್ಯವನ್ನು ಸಮನ್ವಯಗೊಳಿಸುವ ಮತ್ತು ಮೇಲ್ವಿಚಾರಣೆ ಮಾಡುವ ಉದ್ದೇಶಕ್ಕಾಗಿ ಮತ್ತು ಅಂಥ ಕೇಂದ್ರಕ್ಕೆ ವ್ಯವಸ್ಥಾಪನಾ ಮಂಡಳಿಯು ವಹಿಸಿಕೊಡಬಹುದಾದ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸುವುದಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಅಥವಾ ನಿರ್ವಹಿಸಿಕೊಂಡುಬರುವ ಒಂದು ಕೇಂದ್ರ; (ಪಿ) ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ ``ಪ್ರಾಯೋಜಕ ಪ್ರಾಧಿಕಾರ" ಅಥವಾ ``ಪ್ರಾಯೋಜಕ ಸಂಸ್ಥೆ" ಎಂದರೆ ನ್ಯೂ ಹೊರೈಜನ್ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಟ್ರಸ್ಟ್;

(ಕ್ಯೂ) ``ರಾಜ್ಯ" ಎಂದರೆ, ಕರ್ನಾಟಕ ರಾಜ್ಯ;

(ಆರ್) ``ಪರಿನಿಯಮಗಳು" ಮತ್ತು ``ವಿನಿಯಮಗಳು" ಎಂದರೆ, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಅನುಕ್ರಮವಾಗಿ ವಿಶ್ವವಿದ್ಯಾಲಯದ ಪರಿನಿಯಮಗಳು ಮತ್ತು ವಿನಿಯಮಗಳು;

(ಎಸ್) ``ಅಧ್ಯಯನ ಕೇಂದ್ರ" ಎಂದರೆ, ಶಿಕ್ಷಣದ ಸಂಬಂಧದಲ್ಲಿ ವಿದ್ಯಾರ್ಥಿಗಳಿಗೆ ಶಿಕ್ಷಣದ ಸಂಬಂಧದಲ್ಲಿ ಸಲಹೆಗಳನ್ನು ನೀಡುವ, ಸಮಾಲೋಚನೆ ಮಾಡುವ ಅಥವಾ ಇತರ ಯಾವುದೇ ನೆರವನ್ನು ನೀಡುವ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವು ಸ್ಥಾಪಿಸಿದ ಮತ್ತು ನಿರ್ವಹಿಸಿಕೊಂಡುಬಂದ ರಾಜ್ಯದೊಳಗಿನ ಒಂದು ಕೇಂದ್ರ;

(ಟಿ) ``ಅಧ್ಯಾಪಕರು" ಎಂದರೆ, ಒಬ್ಬ ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಒಂದು ಘಟಕ ಕಾಲೇಜಿನಲ್ಲಿ ಬೋಧಿಸುವುದಕ್ಕೆ ಅಥವಾ ಸಂಶೋಧನೆ ನಡೆಸುವುದಕ್ಕೆ ಅಥವಾ ಸಂಶೋಧನೆಗೆ ಮಾರ್ಗದರ್ಶನ ನೀಡುವುದಕ್ಕೆ ನೇಮಕವಾದ ಅಂಥ ಇತರ ವ್ಯಕ್ತಿ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗವು ನಿರ್ದಿಷ್ಟಪಡಿಸಿದ ಗುಣಮಟ್ಟಗಳಿಗೆ ಅನುಸಾರವಾಗಿ ಇರುವ ಘಟಕ ಕಾಲೇಜಿನ ಪ್ರಾಂಶುಪಾಲರು ಇದರಲ್ಲಿ ಒಳಗೊಳ್ಳುತ್ತಾರೆ;

(ಯು) ಟ್ರಸ್ಟ್ ಎಂದರೆ, ಭಾರತೀಯ ಟ್ರಸ್ಟ್ ಅಧಿನಿಯಮ, 1882ರಡಿ (1882ರ ಕೇಂದ್ರ ಅಧಿನಿಯಮ2) ನೊಂದಾಯಿಸಲಾದ ನ್ಯೂ ಹೊರೈಜನ್ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಟ್ರಸ್ಟ್ ;

(ವಿ) ``ವಿಶ್ವವಿದ್ಯಾಲಯ" ಎಂದರೆ, `` ನ್ಯೂ ಹೊರೈಜನ್ ವಿಶ್ವವಿದ್ಯಾಲಯ";

(ಡಬ್ಲ್ಯೂ) ``ವಿಶ್ವವಿದ್ಯಾಲಯ ಅನುದಾನಗಳ ಆಯೋಗ" ಎಂದರೆ, ವಿಶ್ವವಿದ್ಯಾಲಯ ಅನುದಾನಗಳ ಆಯೋಗ ಅಧಿನಿಯಮ, 1956ರ (1956ರ ಕೇಂದ್ರ ಅಧಿನಿಯಮ 3) 4ನೇ ಪ್ರಕರಣದ ಅಡಿಯಲ್ಲಿ ಸ್ಥಾಪಿತವಾದ ಆಯೋಗ;

(ಎಕ್ಸ್) ``ಸಂದರ್ಶಕರು" ಎಂದರೆ, 13ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ವಿಶ್ವವಿದ್ಯಾಲಯದ ಸಂದರ್ಶಕರು.

## ಅಧ್ಯಾಯ- II

## ವಿಶ್ವವಿದ್ಯಾಲಯ ಮತ್ತು ಪ್ರಾಯೋಜಕ ಸಂಸ್ಥೆ

**3. ವಿಶ್ವವಿದ್ಯಾಲಯದ ಸ್ಥಾಪನೆಗೆ ಪ್ರಸ್ತಾವ.-** (1) ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಮತ್ತು ಅದಕ್ಕನುಸಾರವಾಗಿ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಹಕ್ಕನ್ನು ಟ್ರಸ್ಟ್ ಹೊಂದಿರತಕ್ಕದ್ದು.

(2) ಟ್ರಸ್ಟ್, ರಾಜ್ಯ ಸರ್ಕಾರಕ್ಕೆ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವವನ್ನು ಸಲ್ಲಿಸತಕ್ಕದ್ದು.

(3) ಪ್ರಸ್ತಾವವು ಈ ಮುಂದಿನ ವಿವರಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಟ್ರಸ್ಟಿನ ವಿವರಗಳೊಂದಿಗೆ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು;

(ii) ವಿಶ್ವವಿದ್ಯಾಲಯದ ವ್ಯಾಪ್ತಿ ಮತ್ತು ಸ್ಥಾನಮಾನ ಹಾಗೂ ಭೂಮಿಯ ಲಭ್ಯತೆ;

(iii) ಪ್ರಾರಂಭದ ದಿನಾಂಕದಿಂದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಯಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳಬೇಕೆಂದಿರುವ ಅಧ್ಯಯನ ಮತ್ತು ಸಂಶೋಧನಾ ಕಾರ್ಯಕ್ರಮಗಳ ಸ್ವರೂಪ ಮತ್ತು ಬಗೆಗಳು;

(iv) ಪ್ರಾರಂಭಿಸಬೇಕೆಂದು ಪ್ರಸ್ತಾಪಿಸಿರುವ ವ್ಯಾಸಂಗ ವಿಭಾಗಗಳ (ಫ್ಯಾಕಲ್ಟಿಗಳು) ಸ್ವರೂಪ ಅಧ್ಯಯನ ಕ್ರಮಗಳು ಮತ್ತು ಸಂಶೋಧನೆ;

(v) ಕಟ್ಟಡಗಳು, ಸಲಕರಣೆಗಳು ಮತ್ತು ರಚನಾ ಸೌಕರ್ಯಗಳನ್ನು ಒದಗಿಸುವಂಥ ಕ್ಯಾಂಪಸ್ ಅಭಿವೃದ್ಧಿ;

(vi) ಪ್ರಾರಂಭದ ದಿನಾಂಕದ ನಿಕಟ ಐದು ಶೈಕ್ಷಣಿಕ ವರ್ಷಗಳ ಅವಧಿಗಾಗಿ ಬಂಡವಾಳ ವೆಚ್ಚದ ಹಂತಗಳು;

(vii) ಬಾಬುವಾರು ಆವರ್ತಕ ವೆಚ್ಚ, ಆರ್ಥಿಕ ಮೂಲಗಳು ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ತಗಲುವ ಅಂದಾಜು ವೆಚ್ಚ;

(viii) ಸಂಪನ್ಮೂಲ ಸಂಗ್ರಹಣೆಗಾಗಿ ಯೋಜನೆ ಮತ್ತು ಅದಕ್ಕೆ ಬಂಡವಾಳದಿಂದ ತಗಲುವ ವೆಚ್ಚ ಹಾಗೂ ಪ್ರತಿಯೊಂದು ಮೂಲಕ್ಕೂ ಮರು ಸಂದಾಯ ಮಾಡುವ ರೀತಿ;

(ix) ವಿದ್ಯಾರ್ಥಿಗಳಿಂದ ಶುಲ್ಕ ವಸೂಲು ಮಾಡಿ ಆಂತರಿಕವಾಗಿ ನಿಧಿ ಸಂಗ್ರಹಿಸುವ ಯೋಜನೆ, ಸಲಹಾ ಸೇವೆ ಮತ್ತು ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಿಗೆ ಸಂಬಂಧಿಸಿದ ಇತರ ಚಟುವಟಿಕೆಗಳಿಂದ ನಿರೀಕ್ಷಿತ ವರಮಾನಗಳು ಮತ್ತು ಇತರ ನಿರೀಕ್ಷಿತ ವರಮಾನಗಳು;

(x) ಘಟಕವೊಂದಕ್ಕೆ ತಗಲುವ ವೆಚ್ಚದ ವಿವರಗಳು, ಆರ್ಥಿಕವಾಗಿ ದುರ್ಬಲವಾದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕ, ಉಚಿತ ಶಿಕ್ಷಣ (ಫ್ರೀಶಿಪ್) ಮತ್ತು ವಿದ್ಯಾರ್ಥಿ ವೇತನದಲ್ಲಿ ನೀಡುವ ರಿಯಾಯಿತಿ ಅಥವಾ ವಿನಾಯತಿಯ ಪರಿಮಿತಿಯ ವಿವರಗಳನ್ನು ಮತ್ತು ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳಿಗೆ ಅಥವಾ ಅನಿವಾಸಿ ಭಾರತೀಯರು ಅಥವಾ ಭಾರತೀಯ ಮೂಲದ ವ್ಯಕ್ತಿಗಳು ಪ್ರಾಯೋಜಿಸಿದ ವಿದ್ಯಾರ್ಥಿಗಳಿಗೆ ಮತ್ತು ಭಾರತವನ್ನುಳಿದು ಇತರ ರಾಷ್ಟ್ರಗಳ ವಿದ್ಯಾರ್ಥಿಗಳಿಗೆ ವಿಧಿಸತಕ್ಕ ಶುಲ್ಕದ ದರಗಳು ಬೇರೆ ಬೇರೆ ಇದ್ದಲ್ಲಿ ಅವುಗಳನ್ನು ಸೂಚಿಸುವ ಶುಲ್ಕ ರಚನೆಯ ವಿವರಗಳು;

(xi) ಸಂಬಂಧಪಟ್ಟ ಶಿಕ್ಷಣ ವಿಭಾಗದಲ್ಲಿ ಪ್ರಾಯೋಜಕ ಟ್ರಸ್ಟ್ ದೊರಕಿಸಿಕೊಡಲಿರುವ ವರ್ಷಗಳ ಅನುಭವ ಮತ್ತು ಪರಿಣಿತಿ ಹಾಗೂ ಅದರ ಹಣಕಾಸಿನ ಸಂಪನ್ಮೂಲಗಳು;

(xii) ವಿಶ್ವವಿದ್ಯಾಲಯದಲ್ಲಿರುವ ಅಧ್ಯಯನ ಕ್ರಮಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕಾಗಿ ಇರುವ ವ್ಯವಸ್ಥೆ; ಮತ್ತು

(xiii) ವಿಶ್ವವಿದ್ಯಾಲಯವು ಸ್ಥಾಪನೆಯಾಗುವುದಕ್ಕೆ ಮೊದಲು ಈ ಅಧಿನಿಯಮದ ಅಡಿಯಲ್ಲಿ ನೆರವೇರಿಸಬೇಕೆಂದು ರಾಜ್ಯ ಸರ್ಕಾರವು ಅಗತ್ಯಪಡಿಸಬಹುದಾದ ಅಂಥ ಇತರ ಷರತ್ತುಗಳ ನೆರವೇರಿಕೆಯ ಹಂತ.

(4) ವಿಶ್ವವಿದ್ಯಾಲಯದ ಸ್ಥಾಪನೆಗೆ ರಾಜ್ಯ ಸರ್ಕಾರಕ್ಕೆ ಶಿಫಾರಸ್ಸುಗಳನ್ನು ಮಾಡಲು ಪ್ರಾಯೋಜಕ ಟ್ರಸ್ಟ್‌ನಿಂದ ಸ್ವೀಕರಿಸಿದ ಪ್ರಸ್ತಾವಗಳನ್ನು ಪರಿಶೀಲಿಸುವುದಕ್ಕಾಗಿ ರಾಜ್ಯ ಸರ್ಕಾರವು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಪದನಿಮಿತ್ತ ಸದಸ್ಯರಾದ ಮೂವರು ಸದಸ್ಯರುಗಳನ್ನು ಒಳಗೊಂಡ ಒಂದು ಶೋಧನಾ ಸಮಿತಿಯನ್ನು ರಚಿಸತಕ್ಕದ್ದು.

**4. ವಿಶ್ವವಿದ್ಯಾಲಯದ ಸ್ಥಾಪನೆ.-** (1) ರಾಜ್ಯ ಸರ್ಕಾರವು ಶೋಧನಾ ಸಮಿತಿಯು ಮಾಡಿದ ಶಿಫಾರಸ್ಸುಗಳನ್ನು ಪರಿಶೀಲಿಸಿದ ತರುವಾಯ ಮತ್ತು ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ, ಈ ಮುಂದಿನವುಗಳನ್ನು ಹೊಂದಿದೆ ಎಂದು ಮನಗಾಣತಕ್ಕದ್ದು, ಎಂದರೆ:-

(i) ಸಾಕಷ್ಟು ಮೂಲ ಸೌಕರ್ಯಗಳೊಂದಿಗೆ, ವಿಶ್ವವಿದ್ಯಾಲಯವನ್ನು ನಡೆಸಲು ಟ್ರಸ್ಟ್‌ನ ಸಾಮರ್ಥ್ಯ;

(ii) ಅದು ಇರುವ ಸ್ಥಳದ ಅನುಸಾರವಾಗಿ ಕೆಳಗೆ ನಿರ್ದಿಷ್ಟಪಡಿಸಿದ ವ್ಯಾಪ್ತಿಯಲ್ಲಿ ಭೂಮಿಯ ಮಾಲಿಕತ್ವವನ್ನು ಹೊಂದಿದೆ, ಎಂದರೆ :-

(ಎ) ಅದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಿತಿಯೊಳಗಿದ್ದರೆ ಇಪ್ಪತ್ತೈದು ಎಕರೆ ಭೂಮಿ;

(ಬಿ) ಅದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮಿತಿಯ ಹೊರಗೆ ಆದರೆ ಬೆಂಗಳೂರು ಮೆಟ್ರೋಪಾಲಿಟನ್ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಪ್ರದೇಶದ ಒಳಗಿದ್ದರೆ ನಲವತ್ತು ಎಕರೆ ಭೂಮಿ;

(ಸಿ) (ಎ) ಮತ್ತು (ಬಿ) ಖಂಡಗಳಲ್ಲಿ ನಿರ್ದಿಷ್ಟಪಡಿಸಿದ ಸ್ಥಳಗಳನ್ನು ಹೊರತುಪಡಿಸಿ ಇತರ ಸ್ಥಳಗಳಲ್ಲಿ ಐವತ್ತು ಎಕರೆಗಳಿಗೆ ಕಡಿಮೆಯಿಲ್ಲದಷ್ಟು ಭೂಮಿ.

(iii) ಮೇಲೆ ನಿರ್ದಿಷ್ಟಪಡಿಸಿದ ಭೂಮಿಯು ಏಕ ಘಟಕ (ಸಿಂಗಲ್ ಬ್ಲಾಕ್) ದಲ್ಲಿರತಕ್ಕದ್ದು ಮತ್ತು ಇದು ಸಂಬಂಧಪಟ್ಟ ಸೊಸೈಟಿ ಅಥವಾ ಸಂಸ್ಥೆ ಅಥವಾ ವಿಶ್ವವಿದ್ಯಾಲಯದ ಹೆಸರಿನಲ್ಲಿರತಕ್ಕದ್ದು. 3ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ಅಗತ್ಯಪಡಿಸಲಾದಂತೆ ಒದಗಿಸಿದ ವಿವರಗಳ ಆಧಾರದ ಮೇಲೆ ಸರ್ಕಾರವು 48ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಬೇಕೆಂದು ಟ್ರಸ್ಟ್‌ಗೆ ನಿರ್ದೇಶನ ನೀಡಬಹುದು;

(iv) ನಿರ್ದಿಷ್ಟಪಡಿಸಿದ ಶಾಸನಬದ್ಧ ನಿಧಿಗಳ ಸೃಜಿಸಲು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳನ್ನು ನಡೆಸಲು ಸಾಕಷ್ಟು ಹಣಕಾಸಿನ ಸಂಪನ್ಮೂಲಗಳು: ಮತ್ತು

(v) ಉನ್ನತ ಶಿಕ್ಷಣ ಸಂಸ್ಥೆಗಳನ್ನು ನಡೆಸುವಲ್ಲಿ ಅನುಭವ ಅಥವಾ ಪರಿಣಿತಿ.

(2) ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಸ್ಥಾಪನೆಯ ತರುವಾಯ, ರಾಜ್ಯ ಸರ್ಕಾರವು, ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, ನ್ಯೂ ಹೊರೈಜನ್ ವಿಶ್ವವಿದ್ಯಾಲಯ ಎಂಬ ಹೆಸರಿನ ಒಂದು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವನ್ನು ರಾಜ್ಯದಲ್ಲಿ ಸ್ಥಾಪಿಸುವುದಕ್ಕೆ ಮಂಜೂರಾತಿಯನ್ನು ನೀಡಬಹುದು.

(3) ವಿಶ್ವವಿದ್ಯಾಲಯದ ಕೇಂದ್ರ ಕಾರ್ಯಸ್ಥಾನವು ಬೆಂಗಳೂರಿನಲ್ಲಿ ಇರತಕ್ಕದ್ದು. ರಾಜ್ಯ ಸರ್ಕಾರದ ಪೂರ್ವಾನುಮತಿಯನ್ನು ಪಡೆದುಕೊಳ್ಳುವುದಕ್ಕೊಳಪಟ್ಟು ಹಾಗೂ ವಿಶ್ವವಿದ್ಯಾಲಯ ಅನುದಾನಗಳ ಆಯೋಗದ ಗುಣಮಟ್ಟಗಳಿಗನುಸಾರವಾಗಿ ವಿಶ್ವವಿದ್ಯಾಲಯದ ಸ್ಥಾಪನೆಯ ಐದು ವರ್ಷಗಳ ತರುವಾಯ ವಿಶ್ವವಿದ್ಯಾಲಯವು ತನ್ನ ಕ್ಯಾಂಪಸ್ಸುಗಳನ್ನು ಅಥವಾ ಪ್ರಾದೇಶಿಕ ಕೇಂದ್ರಗಳನ್ನು, ಅಧ್ಯಯನ ಕೇಂದ್ರಗಳನ್ನು ಕರ್ನಾಟಕದಲ್ಲಿ ಎಲ್ಲಿಯಾದರೂ ಹೊಂದಿರತಕ್ಕದ್ದು.

(4) ಮೊದಲ ಕುಲಾಧಿಪತಿಯವರು, ಮೊದಲ ಕುಲಪತಿಯವರು, ಪ್ರಬಂಧಕ ಮಂಡಳಿಯ ಮೊದಲ ಸದಸ್ಯರುಗಳು, ವ್ಯವಸ್ಥಾಪನಾ ಮಂಡಳಿಯ ಹಾಗೂ ಶೈಕ್ಷಣಿಕ ಪರಿಷತ್ತಿನ ಮೊದಲ ಸದಸ್ಯರುಗಳು ಮತ್ತು ಇನ್ನು ಮುಂದೆ, ಅಂಥ ಅಧಿಕಾರಿಗಳು ಅಥವಾ ಸದಸ್ಯರುಗಳಾಗಬಹುದಾದಂಥ ಎಲ್ಲಾ ವ್ಯಕ್ತಿಗಳು, ಅಂಥ ಹುದ್ದೆ ಅಥವಾ ಸದಸ್ಯತ್ವವನ್ನು ಹೊಂದಿರುವುದು ಮುಂದುವರೆಯುವವರೆಗೆ, ಒಂದು ನಿಗಮಿತ ನಿಕಾಯವನ್ನು ರಚಿಸತಕ್ಕದ್ದು ಮತ್ತು ಅದು ವಿಶ್ವವಿದ್ಯಾಲಯದ ಹೆಸರಿನಲ್ಲಿ ದಾವೆ ಹೂಡಬಹುದು ಮತ್ತು ದಾವೆಗೊಳಗಾಗಬಹುದು.

(5) (2)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯವು ಸ್ಥಾಪನೆಗೆ ಮಂಜೂರಾತಿಯಾದ ಮೇಲೆ, ವಿಶ್ವವಿದ್ಯಾಲಯದ ಉದ್ದೇಶಕ್ಕಾಗಿ, ಟ್ರಸ್ಟ್ ಆರ್ಜಿಸಿದ, ಸೃಜಿಸಿದ, ಏರ್ಪಾಟು ಮಾಡಿಕೊಂಡ ಅಥವಾ ಕಟ್ಟಲ್ಪಟ್ಟ ಭೂಮಿ ಮತ್ತು ಇತರ ಸ್ಥಿರ ಮತ್ತು ಚರ ಸ್ವತ್ತು, ವಿಶ್ವವಿದ್ಯಾಲಯದಲ್ಲಿ ನಿಹಿತವಾಗಿರತಕ್ಕದ್ದು.

(6) ವಿಶ್ವವಿದ್ಯಾಲಯವು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಎಲ್ಲಾ ದಾವೆಗಳಲ್ಲಿ ಮತ್ತು ಇತರ ಕಾನೂನು ವ್ಯವಹರಣೆಗಳಲ್ಲಿ ವಾದ ಪತ್ರಗಳಿಗೆ ಕುಲಸಚಿವರು ಸಹಿ ಮಾಡಿ ಸತ್ಯಾಪನೆ ಮಾಡತಕ್ಕದ್ದು ಮತ್ತು ಅಂಥ ದಾವೆಗಳಲ್ಲಿನ ಮತ್ತು ವ್ಯವಹರಣೆಗಳಲ್ಲಿನ ಎಲ್ಲಾ ಆದೇಶಿಕೆಗಳನ್ನು ಕುಲಸಚಿವರಿಗೆ ನೀಡತಕ್ಕದ್ದು ಮತ್ತು ಅವರಿಗೆ ಜಾರಿ ಮಾಡತಕ್ಕದ್ದು.

(7) ವಿಶ್ವವಿದ್ಯಾಲಯದಲ್ಲಿನ ಭೂಮಿ, ಕಟ್ಟಡ ಮತ್ತು ಇತರ ಸ್ವತ್ತುಗಳನ್ನು ವಿಶ್ವವಿದ್ಯಾಲಯದ ಉದ್ದೇಶಗಳಿಗೆ ಆನುಷಂಗಿಕವಾಗಿರುವುದನ್ನು ಹೊರತುಪಡಿಸಿ ಇತರ ಯಾವುದೇ ಉದ್ದೇಶಕ್ಕಾಗಿ ಬಳಸತಕ್ಕದ್ದಲ್ಲ.

**5. ಅನುದಾನಗಳು ಮತ್ತು ಹಣಕಾಸು ನೆರವು.-** ವಿಶ್ವವಿದ್ಯಾಲಯವು ಸ್ವಂತ ಧನಮೂಲವುಳ್ಳ ಲಾಭರಹಿತ ಸಂಸ್ಥೆಯಾಗಿರತಕ್ಕದ್ದು ರಾಜ್ಯದಿಂದ ಅಥವಾ ರಾಜ್ಯದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಇತರ ಸಂಸ್ಥೆ ಅಥವಾ ನಿಗಮದಿಂದ ಯಾವುದೇ ನಿರ್ವಹಣಾ ಸಹಾಯ ಅನುದಾನ ಅಥವಾ ಯಾವುದೇ ಹಣಕಾಸು ನೆರವನ್ನು ಹಕ್ಕಿನಿಂದ ಕೇಳತಕ್ಕದ್ದಲ್ಲ ಅಥವಾ ಅದನ್ನು ಪಡೆಯಲು ಹಕ್ಕನ್ನು ಹೊಂದಿರತಕ್ಕದ್ದಲ್ಲ:

ಪರಂತು, ರಾಜ್ಯವು,-

(ಎ) ಇತರೆ ರಾಜ್ಯ ಸರ್ಕಾರದ ಸಂಘಟನೆಗಳಿಗೆ ಹಣಕಾಸು ನೆರವನ್ನು ಒದಗಿಸುತ್ತಿರುವಂಥದ್ದೇ ಸಂಶೋಧನೆ, ಅಭಿವೃದ್ಧಿ ಮತ್ತಿತರ ಚಟುವಟಿಕೆಗಳಿಗಾಗಿ; ಅಥವಾ

(ಬಿ) ರಾಜ್ಯ ಸರ್ಕಾರದಿಂದ ನೆರವನ್ನು ಪಡೆಯುವ ಯಾವುದೇ ನಿರ್ದಿಷ್ಟ ಸಂಶೋಧನೆ ಅಥವಾ ಕಾರ್ಯಕ್ರಮಗಳಿಗಾಗಿ; ಅಥವಾ

(ಸಿ) ರಾಜ್ಯ ಕಾರ್ಯನೀತಿಯ ಬದಲಾವಣೆಗೆ ಒಳಪಟ್ಟು ಅಥವಾ ಅನ್ಯಥಾ ಇದೇ ಬಗೆಯ ವಿಶ್ವವಿದ್ಯಾಲಯಗಳ ಪ್ರಯೋಜನಕ್ಕಾಗಿ,

- ಅನುದಾನದ ಮೂಲಕ ಅಥವಾ ಅನ್ಯಥಾ ಹಣಕಾಸು ಬೆಂಬಲವನ್ನು ಒದಗಿಸಬಹುದು:

ಮತ್ತು ಪರಂತು, ವಿಶ್ವವಿದ್ಯಾಲಯವು, ಯಾವುದೇ ಇತರ ಮೂಲದಿಂದ ಯಾವುದೇ ಆರ್ಥಿಕ ನೆರವನ್ನು ಸ್ವೀಕರಿಸಬಹುದು.

**6. ಘಟಕ ಕಾಲೇಜು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಅಥವಾ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸುವುದಕ್ಕೆ ಅಧಿಕಾರ.-** ವಿಶ್ವವಿದ್ಯಾಲಯವು ಸ್ಥಾಪನೆಯಾದ ತರುವಾಯ ಐದು ವರ್ಷಗಳನ್ನು ಪೂರ್ಣಗೊಳಿಸಿದ ನಂತರ, ವಿಶ್ವವಿದ್ಯಾಲಯ ಅನುದಾನ ಆಯೋಗದ ಮತ್ತು ಇತರ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ಗುಣಮಟ್ಟಗಳಿಗೆ ಒಳಪಟ್ಟು, ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ, ವಿಶ್ವವಿದ್ಯಾಲಯವು, ರಾಜ್ಯದಲ್ಲಿ ತನಗೆ ಸೂಕ್ತವೆನಿಸುವಂಥ ಸ್ಥಳಗಳಲ್ಲಿ ಘಟಕ ಕಾಲೇಜುಗಳು, ಹೆಚ್ಚುವರಿ ಕ್ಯಾಂಪಸ್‌ಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಹೊಂದಿರಬಹುದು.

**7. ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳು.-** ವಿಶ್ವವಿದ್ಯಾಲಯವು, ತನ್ನ ಭವಿಷ್ಯದ ದೃಷ್ಟಿ ಮತ್ತು ಧ್ಯೇಯೋದ್ದೇಶಗಳನ್ನು ಸಾಧಿಸಲು ಈ ಮುಂದಿನಂತೆ ವಿವಿಧ ಬಗೆಯ ಕಾರ್ಯತಂತ್ರಗಳನ್ನು ಕೈಗೊಳ್ಳಬಹುದು:-

(i) ಇತರ ಸಂಬಂಧಿತ ಅಭಿವೃದ್ಧಿ ಕ್ಷೇತ್ರಗಳನ್ನು ಒಳಗೊಂಡಂತೆ ವಿಜ್ಞಾನ, ತಾಂತ್ರಿಕ ಶಿಕ್ಷಣ, ಹಣಕಾಸು, ವ್ಯವಸ್ಥಾಪನೆ, ವಾಣಿಜ್ಯ, ಬೋಧನೆ ಕಲಿಕೆ, ಮುಕ್ತ ಕಲೆಗಳು, ಮಾನವಿಕಗಳು, ಕಲೆ, ವಿವಿಧ ವ್ಯಾಸಂಗ ಕ್ರಮಗಳಲ್ಲಿ ಶಿಕ್ಷಣ, ಬೋಧನೆ ತರಬೇತಿ, ಸಂಶೋಧನೆ, ಸಮಾಲೋಚನೆ ಮತ್ತು ಅಭಿವೃದ್ಧಿಯನ್ನು ಕಲ್ಪಿಸುವುದು ಹಾಗೂ ಈ ಕ್ಷೇತ್ರಗಳಲ್ಲಿ ಸಂಶೋಧನೆ, ಪ್ರಗತಿ ಮತ್ತು ಜ್ಞಾನ ಪ್ರಸಾರಕ್ಕೆ ಉಪಬಂಧಗಳನ್ನು ಕಲ್ಪಿಸುವುದು;

(ii) ಉನ್ನತ ಮತ್ತು ವೃತ್ತಿ ಶಿಕ್ಷಣದಲ್ಲಿ ಬೋಧಕರಿಗಾಗಿ, ಆಡಳಿತಗಾರರಿಗಾಗಿ ಹಾಗೂ ಸರ್ಕಾರಿ, ಸಾರ್ವಜನಿಕ ಮತ್ತು ಖಾಸಗಿ ವಲಯದಲ್ಲಿ ಕೆಲಸ ಮಾಡುವ ವೃತ್ತಿನಿರತರಿಗಾಗಿ ಮತ್ತು ಇತರ ವ್ಯವಸ್ಥೆಗಳಲ್ಲಿನ ಅಭಿವೃದ್ಧಿ ವೃತ್ತಿ ನಿರತರಿಗಾಗಿ ಉನ್ನತ ಗುಣಮಟ್ಟದ ತರಬೇತಿ, ಸಾಮರ್ಥ್ಯ ವೃದ್ಧಿ ಹಾಗೂ ಬೆಳವಣಿಗೆ ವ್ಯವಸ್ಥೆಗಳನ್ನು ವಿನ್ಯಾಸಗೊಳಿಸುವುದು ಮತ್ತು ಪ್ರಚುರಪಡಿಸುವುದು ;

(iii) ಗುಣಮಟ್ಟದ ಶಿಕ್ಷಣಕ್ಕೆ ಕೊಡುಗೆಯನ್ನು ನೀಡಲು ಸಂಪನ್ಮೂಲ ಕೇಂದ್ರಗಳನ್ನು ಅಭಿವೃದ್ಧಿಪಡಿಸುವುದು;

(iv) ಕ್ಯಾಂಪಸ್‌ಗಳನ್ನು ಸ್ಥಾಪಿಸುವುದು ಮತ್ತು ಐದು ವರ್ಷಗಳ ತರುವಾಯ ಕರ್ನಾಟಕದ ಹಲವು ಸ್ಥಳಗಳಲ್ಲಿ ಅಧ್ಯಯನ ಕೇಂದ್ರಗಳು, ಘಟಕ ಕಾಲೇಜುಗಳು ಮತ್ತು ಪ್ರಾದೇಶಿಕ ಕೇಂದ್ರಗಳನ್ನು ಹೊಂದುವುದು ಹಾಗೂ ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ವಿಶ್ವವಿದ್ಯಾಲಯ ಅನುದಾನಗಳ ಆಯೋಗದ ಗುಣಮಟ್ಟಗಳ ಅನುಸಾರವಾಗಿ ತಾಂತ್ರಿಕ ಮತ್ತು ವೃತ್ತಿ ಶಿಕ್ಷಣ ಹಾಗೂ ಸಾಮಾಜಿಕ ಮತ್ತು ಮಾನವ ಅಭಿವೃದ್ಧಿಗಳಲ್ಲಿ ಶೈಕ್ಷಣಿಕ ಬದಲಾವಣೆಗಾಗಿ ಕೊಡುಗೆ ನೀಡುವುದು ಮತ್ತು ಅದರ ಅರ್ಥೈಸುವಿಕೆಯನ್ನು ಅಭಿವೃದ್ಧಿಗೊಳಿಸುವುದು;

(v) ಮೌಲ್ಯಮಾಪನದ ವಿವಿಧ ವಿಧಾನಗಳ ಮೂಲಕ ಮಾಡಿದ ಮೌಲ್ಯಮಾಪನಕ್ಕೆ ಅನುಸಾರವಾಗಿ ಶಿಕ್ಷಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದುದರ ಆಧಾರದ ಮೇಲೆ ಪದವಿಗಳನ್ನು, ಡಿಪ್ಲೋಮೋಗಳನ್ನು, ಪ್ರಮಾಣಪತ್ರಗಳನ್ನು ಮತ್ತು ಯಶೋಪತ್ರ ಪ್ರದಾನದಂಥ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(vi) ವಿದ್ಯಾರ್ಥಿಗಳಿಗೆ, ಬೋಧಕ ವೃಂದದ (ಫ್ಯಾಕಲ್ಟಿ) ಸದಸ್ಯರಿಗೆ ಮತ್ತು ಇತರರಿಗೆ ನಿರ್ದಿಷ್ಟ ಶೈಕ್ಷಣಿಕ ಮತ್ತು ಸಂಶೋಧನಾ ಕಾರ್ಯಕ್ರಮಗಳನ್ನು, ತರಬೇತಿ ಕಾರ್ಯಕ್ರಮಗಳನ್ನು ಮತ್ತು ವಿನಿಮಯ ಕಾರ್ಯಕ್ರಮಗಳನ್ನು ಪರಿಕಲ್ಪಿಸಲು, ವಿನ್ಯಾಸಗೊಳಿಸಲು, ಅಭಿವೃದ್ಧಿಪಡಿಸಲು ಇತರ ಯಾವುದೇ ವಿಶ್ವವಿದ್ಯಾಲಯಗಳು, ಸಂಶೋಧನಾ ಸಂಸ್ಥೆಗಳು, ಲಾಭರಹಿತ ಸಂಸ್ಥೆಗಳು, ಕೈಗಾರಿಕಾ ಸಂಸ್ಥೆಗಳು, ವೃತ್ತಿಪರ ಸಂಸ್ಥೆಗಳು ಅಥವಾ ಇತರ ಸಂಸ್ಥೆಗಳೊಂದಿಗೆ ಸಹಯೋಗವನ್ನು ಹೊಂದುವುದು;

(vii) ಉಪನ್ಯಾಸ ಮಾಲಿಕೆಗಳು, ವಿಚಾರ ಸಂಕಿರಣಗಳು, ಸಮ್ಮೇಳನಗಳು, ಕಾರ್ಯಾಂಗ ಶಿಕ್ಷಣ ಕಾರ್ಯಕ್ರಮಗಳು, ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳು, ಪ್ರಕಟಣೆಗಳು ಮತ್ತು ತರಬೇತಿ ಕಾರ್ಯಕ್ರಮಗಳು ಮತ್ತು ಕಾರ್ಯಸೂಚಿಗಳ ಮೂಲಕ ಜ್ಞಾನ ಪ್ರಸಾರ ಮಾಡುವುದು ಮತ್ತು ಶಿಕ್ಷಣ ಮತ್ತು ತತ್ಸಂಬಂಧಿತ ಅಭಿವೃದ್ಧಿ ಕ್ಷೇತ್ರಗಳ ವಿಷಯಗಳ ಬಗ್ಗೆ ಸಾರ್ವಜನಿಕ ಚರ್ಚೆಯನ್ನು ಏರ್ಪಡಿಸುವುದು;

(viii) ರಾಜ್ಯ ಸರ್ಕಾರದ ಪೂರ್ವ ಅನುಮತಿಯೊಂದಿಗೆ, ಉತ್ತಮ ಗುಣಮಟ್ಟದ ಇತರ ಯಾವುವೇ ಸಂಸ್ಥೆಗಳೊಂದಿಗೆ ಸಹಭಾಗಿಗಳಾಗಿ ವಿಶ್ವವಿದ್ಯಾಲಯದ ಬೋಧಕ ವೃಂದ (ಫ್ಯಾಕಲ್ಟಿ) ಮತ್ತು ಸಂಶೋಧಕರ ಅಭಿವೃದ್ಧಿ ಮತ್ತು ತರಬೇತಿಗಾಗಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು;

(ix) ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ, ಯಾವುದೇ ಸಂಸ್ಥೆಯೊಂದಿಗೆ ಸಹಯೋಗ ಹೊಂದಿ ಸಂಶೋಧನೆಯನ್ನು ಮತ್ತು ಹೊಸತನವನ್ನು ಬೆಳಕಿಗೆ ತರುವುದು;

(x) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದಕ್ಕಾಗಿ ಮತ್ತು ಉತ್ತೇಜಿಸುವುದಕ್ಕಾಗಿ ಅವಶ್ಯಕವಾದ ಮತ್ತು ಯುಕ್ತವಾದ ಕ್ರಮಗಳನ್ನು ಕೈಗೊಳ್ಳುವುದು;

(xi) ಶಿಕ್ಷಣ ಮತ್ತು ಇತರ ಅಭಿವೃದ್ಧಿ ವಲಯಗಳನ್ನು ವಿಸ್ತರಿಸುವುದಕ್ಕಾಗಿ ಸರ್ಕಾರವು ಅನುಮೋದಿಸಬಹುದಾದಂತೆ ಯಾವುವೇ ಧ್ಯೇಯೋದ್ದೇಶಗಳನ್ನು ಮುಂದುವರಿಸುವುದು.

**8. ವಿಶ್ವವಿದ್ಯಾಲಯದ ಅಧಿಕಾರಗಳು.-** ವಿಶ್ವವಿದ್ಯಾಲಯವು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ವಿಶ್ವವಿದ್ಯಾಲಯದ ಅನುದಾನ ಆಯೋಗದ ಗುಣಮಟ್ಟಗಳಿಗೆ ಅನುಸಾರವಾಗಿ ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿರ್ಧರಿಸಬಹುದಾದಂತೆ ವಿಶ್ವವಿದ್ಯಾಲಯದ ಸ್ಥಾಪನೆಯ ದಿನಾಂಕದಿಂದ ಐದು ವರ್ಷಗಳ ತರುವಾಯ ಕ್ಯಾಂಪಸ್ಸುಗಳು, ಪ್ರಾದೇಶಿಕ ಕೇಂದ್ರಗಳು ಮತ್ತು ಅಧ್ಯಯನ ಕೇಂದ್ರಗಳನ್ನು ಕರ್ನಾಟಕದಲ್ಲಿ ಸ್ಥಾಪಿಸುವುದು ಮತ್ತು ನಿರ್ವಹಿಸುವುದು;

(ii) ವಿಶ್ವವಿದ್ಯಾಲಯದ ಉದ್ದೇಶವನ್ನು ಕಾರ್ಯರೂಪಕ್ಕೆ ತರುವಲ್ಲಿ ಅಗತ್ಯವಾಗಬಹುದಾದ ಅಥವಾ ಕಾರ್ಯಸಾಧ್ಯವಾಗಬಹುದಾದ ಎಲ್ಲಾ ಅಂಥ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು;

(iii) ಪರಿನಿಯಮಗಳಲ್ಲಿ ಹೇಳಲಾದ ರೀತಿಯಲ್ಲಿ ಮತ್ತು ಷರತ್ತುಗಳಿಗೊಳಪಟ್ಟು ಪದವಿಗಳು ಅಥವಾ ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರದಾನಮಾಡುವುದು;

(iv) ಪರಿನಿಯಮಗಳನುಸಾರವಾಗಿ ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿ ವೇತನಗಳು ಮತ್ತು ಬಹುಮಾನಗಳು, ಅವಾರ್ಡುಗಳು, ಪಾರಿತೋಷಕಗಳು ಇತ್ಯಾದಿಗಳನ್ನು ಸ್ಥಾಪಿಸುವುದು ಮತ್ತು ನೀಡುವುದು;

(v) ಪರಿನಿಯಮಗಳಲ್ಲಿ ಅಥವಾ ಸಂದರ್ಭಾನುಸಾರವಾಗಿ ನಿಯಮಗಳಲ್ಲಿ ನಿಗದಿಪಡಿಸಬಹುದಾದ ಅಂಥ ಶುಲ್ಕಗಳು, ಬಿಲ್ಲುಗಳು, ಖರೀದಿ ಪಟ್ಟಿಗಳನ್ನು ಕೇಳಿಪಡೆದುಕೊಳ್ಳುವುದು ಮತ್ತು ಸ್ವೀಕರಿಸುವುದು ಹಾಗೂ ಚಾರ್ಜುಗಳನ್ನು ವಸೂಲು ಮಾಡುವುದು;

(vi) ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಪಠ್ಯೇತರ ಚಟುವಟಿಕೆಗಳಿಗೆ ಉಪಬಂಧಗಳನ್ನು ಕಲ್ಪಿಸುವುದು;

(vii) ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ, ಕ್ಯಾಂಪಸುಗಳ, ಪ್ರಾದೇಶಿಕ ಕೇಂದ್ರಗಳ, ಅಧ್ಯಯನ ಕೇಂದ್ರಗಳ ಫ್ಯಾಕಲ್ಟಿ, ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವುದು;

(viii) ವಿಶ್ವವಿದ್ಯಾಲಯದ ಅಥವಾ ಒಂದು ಘಟಕ ಕಾಲೇಜಿನ ಅಥವಾ ಕ್ಯಾಂಪಸ್ಸಿನ, ಪ್ರಾದೇಶಿಕ ಕೇಂದ್ರದ ಮತ್ತು ಅಧ್ಯಯನ ಕೇಂದ್ರದ ಉದ್ದೇಶಕ್ಕಾಗಿ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದಿರುವ, ಯಾವುದೇ ರೀತಿಯ ಸ್ವಯಂ ದೇಣಿಗೆಗಳು ಮತ್ತು ಕೊಡುಗೆಗಳನ್ನು ಸ್ವೀಕರಿಸುವುದು ಮತ್ತು ಟ್ರಸ್ಟ್ ಮತ್ತು ದತ್ತಿ ಸ್ವತ್ತುಗಳೂ ಸೇರಿದಂತೆ, ಯಾವುದೇ ಚರ ಅಥವಾ ಸ್ಥಿರ ಸ್ವತ್ತನ್ನು ಆರ್ಜಿಸುವುದು, ಹೊಂದಿರುವುದು, ನಿರ್ವಹಿಸುವುದು, ನಡೆಸುವುದು ಮತ್ತು ಹಸ್ತಾಂತರ ಮಾಡುವುದು;

(ix) ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವುದು ಮತ್ತು ನಿರ್ವಹಿಸಿಕೊಂಡು ಬರುವುದು ಹಾಗೂ ವಿಶ್ವವಿದ್ಯಾಲಯದ ಅಥವಾ ಘಟಕ ಕಾಲೇಜಿನ ವಿದ್ಯಾರ್ಥಿಗಳಿಗೆ ವಸತಿ ಸ್ಥಳಗಳನ್ನು ಗುರುತಿಸುವುದು;

(x) ವಸತಿಯ ಮೇಲ್ವಿಚಾರಣೆ ಮಾಡುವುದು ಮತ್ತು ನಿಯಂತ್ರಣ ಮಾಡುವುದು ಹಾಗೂ ವಿದ್ಯಾರ್ಥಿಗಳು ಮತ್ತು ಎಲ್ಲಾ ಪ್ರವರ್ಗಗಳ ಸಿಬ್ಬಂದಿಗಳಲ್ಲಿ ಶಿಸ್ತು ನಿಯಂತ್ರಣ ಮಾಡುವುದು ಮತ್ತು

ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ನಡತೆ ಸಂಹಿತೆಯನ್ನು ರೂಪಿಸುವುದೂ ಒಳಗೊಂಡಂತೆ, ಅಂಥ ಸಿಬ್ಬಂದಿಗಳ ಸೇವಾಷರತ್ತುಗಳನ್ನು ನಿರೂಪಿಸುವುದು;

(xi) ಶೈಕ್ಷಣಿಕ, ಆಡಳಿತಾತ್ಮಕ ಮತ್ತು ಬೆಂಬಲ ಸಿಬ್ಬಂದಿಯ ಹುದ್ದೆಗಳನ್ನು ಮತ್ತು ಇತರ ಅವಶ್ಯ ಹುದ್ದೆಗಳನ್ನು ಸೃಜಿಸುವುದು;

(xii) ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ಉದ್ದೇಶಗಳಿಗಾಗಿ ಇತರ ವಿಶ್ವವಿದ್ಯಾಲಯಗಳೊಡನೆ ಸಹಕರಿಸುವುದು ಮತ್ತು ಸಹಯೋಗ ಹೊಂದುವುದು;

(xiii) ಶಿಕ್ಷಕರಿಗೆ, ಪಠ್ಯ ಬರಹಗಾರರಿಗೆ, ಮೌಲ್ಯಮಾಪಕರಿಗೆ ಮತ್ತಿತರ ಶೈಕ್ಷಣಿಕ ಸಿಬ್ಬಂದಿಗೆ ಪುನರ್ಮನನ ವ್ಯಾಸಂಗಕ್ರಮಗಳು, ಪರಿಚಯಾತ್ಮಕ ವ್ಯಾಸಂಗ ಕ್ರಮಗಳು, ಕಾರ್ಯಾಗಾರಗಳು, ವಿಚಾರಗೋಷ್ಠಿಗಳು ಮತ್ತಿತರ ಕಾರ್ಯಕ್ರಮಗಳನ್ನು ಏರ್ಪಡಿಸುವುದು ಮತ್ತು ನಡೆಸುವುದು;

(xiv) ಶೈಕ್ಷಣಿಕ ಪರಿಷತ್ತಿನ ಅನುಮೋದನೆಯೊಂದಿಗೆ ವಿಶ್ವವಿದ್ಯಾಲಯಕ್ಕೆ ಅಥವಾ ಘಟಕ ಕಾಲೇಜಿಗೆ, ಪ್ರಾದೇಶಿಕ ಕೇಂದ್ರಗಳಿಗೆ, ಅಧ್ಯಯನ ಕೇಂದ್ರಗಳಿಗೆ ಪ್ರವೇಶವನ್ನು ನೀಡುವುದಕ್ಕೆ ಮಾನಕ ಗುಣಮಟ್ಟಗಳನ್ನು ನಿರ್ಧರಿಸುವುದು ಮತ್ತು ಈ ಅಧಿನಿಯಮದಲ್ಲಿ ಕಲ್ಪಿಸಿದ ವ್ಯಾಪ್ತಿಗಿಂತ ಕಡಿಮೆಯಿಲ್ಲದಂತೆ ಕರ್ನಾಟಕದ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನೀಡುವುದು;

(xv) ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳನ್ನು ಕಾರ್ಯರೂಪಕ್ಕೆ ತರಲು ಅವಶ್ಯವಾಗಬಹುದಾದಂಥ ಇತರ ಎಲ್ಲಾ ಕ್ರಮಗಳನ್ನು ಅಥವಾ ಕಾರ್ಯಗಳನ್ನು, ಅವು ಮೇಲೆ ಹೇಳಿದ ಅಧಿಕಾರಗಳಿಗೆ ಪ್ರಾಸಂಗಿಕವಾಗಿರಲಿ ಅಥವಾ ಇಲ್ಲದಿರಲಿ, ಕೈಗೊಳ್ಳುವುದು;

(xvi) ಪರೀಕ್ಷೆಗಳ ಆಧಾರದ ಮೇಲೆ ಅಥವಾ ಸರ್ಕಾರದಿಂದ ಅನುಮೋದಿತವಾದ ಇತರ ಯಾವುದೇ ಮೌಲ್ಯಮಾಪನ ವಿಧಾನದ ಆಧಾರದ ಮೇಲೆ ನೀಡಲು ಪದವಿಗಳು, ಡಿಪ್ಲೋಮಾಗಳು, ಪ್ರಮಾಣಪತ್ರಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳನ್ನು ಪ್ರಾರಂಭಿಸುವುದು;

(xvii) ಫಿಲಂಗಳು, ಕ್ಯಾಸೆಟ್‌ಗಳು, ಧ್ವನಿಸುರುಳಿಗಳು, ದೃಶ್ಯಸುರುಳಿಗಳು, ಸಿ.ಡಿ., ವಿ.ಸಿ.ಡಿ. ಪೆನ್ ಡ್ರೈವ್‌ಗಳು ಮತ್ತು ಇತರ ತಂತ್ರಾಂಶಗಳೂ ಹಾಗೂ ಇತರ ಸಂಬಂಧಿತ ವಿದ್ಯುನ್ಮಾನ ಮತ್ತು ಮುದ್ರಣ ಮಾಧ್ಯಮ ಸೇರಿದಂತೆ ಬೋಧಕ ಸಾಮಗ್ರಿಗಳನ್ನು ತಯಾರಿಸುವುದಕ್ಕಾಗಿ ಅವಕಾಶ ಕಲ್ಪಿಸುವುದು;

(xviii) ಪ್ರಬಂಧಕ ಮಂಡಳಿಯ ಅನುಮೋದನೆಯೊಡನೆ ವಿಶ್ವವಿದ್ಯಾಲಯದ ಉದ್ದೇಶಗಳಿಗಾಗಿ ವಿಶ್ವವಿದ್ಯಾಲಯದ ಸ್ವತ್ತುಗಳನ್ನು ಭದ್ರತೆಯಾಗಿ ನೀಡಿ ಅಥವಾ ನೀಡದೆ ಹಣವನ್ನು ಪಡೆಯುವುದು, ಸಂಗ್ರಹಿಸುವುದು, ಚಂದಾದಾರರಾಗುವುದು ಮತ್ತು ಸಾಲ ಪಡೆಯುವುದು;

(xix) ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುದೇ ಇತರ ಶೈಕ್ಷಣಿಕ ಸಂಸ್ಥೆಗಳ ಆಡಳಿತವನ್ನು ವಶಪಡಿಸಿಕೊಳ್ಳುವುದು ಮತ್ತು ತೆಗೆದುಕೊಳ್ಳುವುದು ಹಾಗೂ ನಡೆಸುವುದು;

(xx) ವ್ಯವಸ್ಥಾಪನಾ ಮಂಡಳಿ ಪೂರ್ವಾನುಮೋದನೆಯೊಂದಿಗೆ ಸ್ವತ್ತುಗಳನ್ನು ಆರ್ಜಿಸುವುದು; ಮತ್ತು

(xxi) ವಿಶ್ವವಿದ್ಯಾಲಯದ ಮೇಲಿನ ಉದ್ದೇಶಗಳಿಗೆ ಸಂಬಂಧಿಸಿದ ಅಥವಾ ಪ್ರಾಸಂಗಿಕವಾದ ಯಾವುದೇ ಇತರ ಚಟುವಟಿಕೆಗಳನ್ನು ಕೈಗೊಳ್ಳುವುದು.

**9. ವಿಶ್ವವಿದ್ಯಾಲಯವು ಎಲ್ಲಾ ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರದ ಎಲ್ಲರಿಗೂ ಮುಕ್ತವಾಗಿರತಕ್ಕದ್ದು.-** ವಿಶ್ವವಿದ್ಯಾಲಯದ ಪ್ರವೇಶಗಳು ವರ್ಗ, ಜಾತಿ, ಮತ, ಲಿಂಗ ಅಥವಾ ರಾಷ್ಟ್ರದ ಎಲ್ಲಾ ವ್ಯಕ್ತಿಗಳಿಗೂ ಮುಕ್ತವಾಗಿರತಕ್ಕದ್ದು. ಎಲ್ಲಾ ಪ್ರವೇಶಗಳನ್ನು ಅರ್ಹತಾ ಪರೀಕ್ಷೆಗಳಲ್ಲಿನ ಅರ್ಹತೆಯ ಆಧಾರದ ಮೇಲೆ ಮಾಡತಕ್ಕದ್ದು:

ಪರಂತು, ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳ ಪ್ರವೇಶದಲ್ಲಿ ಶೇಕಡಾ ನಲವತ್ತರಷ್ಟನ್ನು ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ಮೀಸಲಿಡತಕ್ಕದ್ದು ಮತ್ತು ಪ್ರವೇಶಗಳನ್ನು ಕೇಂದ್ರ ಸರ್ಕಾರವು ಅಥವಾ ರಾಜ್ಯ ಸರ್ಕಾರವು ಅಥವಾ ಸಂದರ್ಭಾನುಸಾರವಾಗಿ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡತಕ್ಕದ್ದು ಮತ್ತು ಸೀಟುಗಳನ್ನು ಅರ್ಹತೆ ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ರೂಪಿಸುವ ಮೀಸಲಾತಿ ನೀತಿಗೆ ಅನುಸಾರವಾಗಿ ಹಂಚಿಕೆ ಮಾಡತಕ್ಕದ್ದು:

ಮತ್ತು ಪರಂತು, ಯಾವುದೇ ಕೋರ್ಸಿನಲ್ಲಿ ಹತ್ತಕ್ಕಿಂತ ಕಡಿಮೆ ಸೀಟುಗಳು ಇರುವಲ್ಲಿ, ಸ್ನಾತಕೋತ್ತರ, ಪಿಹೆಚ್‌ಡಿ ಮತ್ತು ಸಂಶೋಧನೆ ಇಂಥ ಕೋರ್ಸುಗಳನ್ನು ಒಟ್ಟಿಗೆ ಒಂದುಗೂಡಿಸುವ ಮೂಲಕ ಮೀಸಲಿಡತಕ್ಕದ್ದು ಮತ್ತು ಯಾವುದೇ ಕೋರ್ಸಿನಲ್ಲಿ ಮೂರು ಸೀಟುಗಳಿಗಿಂತ ಕಡಿಮೆ ಇರುವಲ್ಲಿ, ಅವುಗಳನ್ನು ಸರದಿ ಸುತ್ತಿನಲ್ಲಿ ಮೀಸಲಿಡತಕ್ಕದ್ದು.

**10. ರಾಷ್ಟ್ರೀಯ ಅಧಿಮಾನ್ಯತೆ.-** ವಿಶ್ವವಿದ್ಯಾಲಯವು ಪ್ರಾರಂಭವಾದ ತರುವಾಯ ಆದಷ್ಟು ಬೇಗನೆ ಸಂಬಂಧಪಟ್ಟ ಶಾಸನಾತ್ಮಕ ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳಿಂದ ಅಧಿಮಾನ್ಯತೆಯನ್ನು ಕೋರತಕ್ಕದ್ದು ಮತ್ತು ಈ ವಿಶ್ವವಿದ್ಯಾಲಯಗಳು ನಡೆಸುವ ಎಲ್ಲಾ ವ್ಯಾಸಂಗ ಕ್ರಮಗಳು ರಾಷ್ಟ್ರೀಯ ಅಧಿಮಾನ್ಯತಾ ಸಂಸ್ಥೆಗಳ ವಿನಿಯಮಗಳಿಗೆ ಅನುಸಾರವಾಗಿ ಇರತಕ್ಕದ್ದು.

**11. ಪ್ರಾಯೋಜಕ ಸಂಸ್ಥೆಯ ಅಧಿಕಾರಗಳು.-** ಪ್ರಾಯೋಜಕ ಸಂಸ್ಥೆಯು ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದಂತೆ ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಇವುಗಳಲ್ಲಿ ಪ್ರತಿಯೊಂದನ್ನು ಪ್ರಾಯೋಜಕ ಸಂಸ್ಥೆಯು ತನ್ನ ವಿವೇಚನಾನುಸಾರ ಚಲಾಯಿಸಬಹುದು, ಎಂದರೆ:-

(i) ಕುಲಾಧಿಪತಿಯವರನ್ನು ನೇಮಿಸುವುದು ಅಥವಾ ಪುನರ್‌ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(ii) ವಿಶ್ವವಿದ್ಯಾಲಯದ ಪ್ರಥಮ ಪ್ರಬಂಧಕ ಮಂಡಳಿಯನ್ನು ರಚಿಸುವುದು;

(iii) ಪ್ರಬಂಧಕ ಮಂಡಳಿಯ ಪ್ರಥಮ ಅಧ್ಯಕ್ಷರನ್ನು ನಾಮನಿರ್ದೇಶಿಸುವುದು;

(iv) ಪ್ರಬಂಧಕ ಮಂಡಳಿಯ ಸದಸ್ಯರಾಗಿ ಮೂರು ವ್ಯಕ್ತಿಗಳನ್ನು ನಾಮನಿರ್ದೇಶಿಸುವುದು;

(v) ವ್ಯವಸ್ಥಾಪನಾ ಮಂಡಳಿ ಸದಸ್ಯರಾಗಿ ಇಬ್ಬರು ವ್ಯಕ್ತಿಗಳನ್ನು ನಾಮ ನಿರ್ದೇಶಿಸುವುದು;

(vi) ವಿಶ್ವವಿದ್ಯಾಲಯದ ದತ್ತಿ ನಿಧಿಗೆ ದೇಣಿಗೆ ನೀಡಲು ನಿಧಿ ಮೂಲಗಳನ್ನು ನಿರ್ಧರಿಸುವುದು;

(vii) ವಿಶ್ವವಿದ್ಯಾಲಯದ ಹಣದ ವಿನಿಯೋಗ ಮತ್ತು ವೆಚ್ಚ ಮಾಡುವುದನ್ನು ನಿರ್ಧರಿಸುವುದು; ಮತ್ತು

(viii) ಈ ಅಧಿನಿಯಮದಲ್ಲಿ ಉಪಬಂಧಿಸಿರುವ ವಿಧಾನದಲ್ಲಿ ಪ್ರಬಂಧಕ ಮಂಡಳಿಯ ಸಭೆಯಲ್ಲಿಯ ವಿವಾದಗಳನ್ನು ಬಗೆಹರಿಸುವುದು.

## ಅಧ್ಯಾಯ - III

## ವಿಶ್ವವಿದ್ಯಾಲಯದ ಅಧಿಕಾರಿಗಳು

**12. ವಿಶ್ವವಿದ್ಯಾಲಯದ ಅಧಿಕಾರಿಗಳು.-** ಈ ಮುಂದಿನವರು ವಿಶ್ವವಿದ್ಯಾಲಯದ ಅಧಿಕಾರಿಗಳಾಗಿರತಕ್ಕದ್ದು, ಎಂದರೆ:-

(i) ಸಂದರ್ಶಕರು;

(ii) ಸಹ-ಸಂದರ್ಶಕರು;

(iii) ಕುಲಾಧಿಪತಿಗಳು;

(iv) ಸಹ-ಕುಲಾಧಿಪತಿಗಳು;

(v) ಕುಲಪತಿಗಳು;

(vi) ಸಹಕುಲಪತಿಗಳು;

(vii) ವ್ಯಾಸಂಗ ವಿಭಾಗದ ಡೀನ್‌ಗಳು;

(viii) ಕುಲಸಚಿವರು;

(ix) ಹಣಕಾಸು ಅಧಿಕಾರಿ; ಮತ್ತು

(x) ಪರಿನಿಯಮಗಳ ಮೂಲಕ ವಿಶ್ವವಿದ್ಯಾಲಯದ ಅಧಿಕಾರಿಗಳೆಂದು ಘೋಷಿಸಬಹುದಾದಂಥ ಇತರ ಅಧಿಕಾರಿಗಳು.

**13. ಸಂದರ್ಶಕರು.-** (1) ಕರ್ನಾಟಕದ ಮಾನ್ಯ ರಾಜ್ಯಪಾಲರು ವಿಶ್ವವಿದ್ಯಾಲಯದ ಸಂದರ್ಶಕರಾಗಿರತಕ್ಕದ್ದು ಮತ್ತು ಸಂದರ್ಶಕರು ವಿಶ್ವವಿದ್ಯಾಲಯದ ಕಾರ್ಯನಿರ್ವಹಣೆಯ ಸುಧಾರಣೆಗಾಗಿ ಸಲಹೆಗಳನ್ನು ನೀಡಬಹುದು.

(2) ಸಂದರ್ಶಕರು, ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಸಂದರ್ಶಕರು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ವ್ಯವಹಾರಗಳಿಗೆ ಸಂಬಂಧಿಸಿದಂತೆ, ಯಾವುದೇ ಕಾಗದ ಪತ್ರ ಅಥವಾ ಮಾಹಿತಿಯನ್ನು ತರಿಸಿಕೊಳ್ಳುವುದು; ಮತ್ತು

(ii) ಸಂದರ್ಶಕರು, ಅವರು ಸ್ವೀಕರಿಸಿದ ಮಾಹಿತಿಯ ಆಧಾರದ ಮೇಲೆ ವಿಶ್ವವಿದ್ಯಾಲಯಗಳ ಯಾವುದೇ ಪ್ರಾಧಿಕಾರವು ಮಾಡಿದ ಯಾವುದೇ ಆದೇಶ, ನಡೆಸಿದ ವ್ಯವಹರಣೆಗಳು ಅಥವಾ ಕೈಗೊಂಡ ತೀರ್ಮಾನಗಳು, ಈ ಅಧಿನಿಯಮ, ವಿನಿಯಮಗಳು ಅಥವಾ ನಿಯಮಗಳಿಗೆ ಪೂರಕವಾಗಿಲ್ಲವೆಂದು ಮನಗಂಡರೆ ಅವರು ವಿಶ್ವವಿದ್ಯಾಲಯದ ಹಿತಾಸಕ್ತಿಯಿಂದ ತಾವು ಸೂಕ್ತವೆಂದು ಭಾವಿಸಬಹುದಾದಂಥ ನಿರ್ದೇಶನಗಳನ್ನು ಹೊರಡಿಸಬಹುದು ಮತ್ತು ಹಾಗೆ ಹೊರಡಿಸಿದ ನಿರ್ದೇಶನಗಳನ್ನು ಸಂಬಂಧಪಟ್ಟವರೆಲ್ಲರೂ ಪಾಲಿಸತಕ್ಕದ್ದು.

**14. ಸಹ-ಸಂದರ್ಶಕರು.-** (1) ಕರ್ನಾಟಕ ಸರ್ಕಾರದ ಮಾನ್ಯ ಉನ್ನತ ಶಿಕ್ಷಣ ಮಂತ್ರಿಗಳು ವಿಶ್ವವಿದ್ಯಾಲಯದ ಸಹ-ಸಂದರ್ಶಕರಾಗಿರತಕ್ಕದ್ದು.

(2) ಸಂದರ್ಶಕರ ಅನುಪಸ್ಥಿತಿಯಲ್ಲಿ ಸಹ-ಸಂದರ್ಶಕರು ಪದವಿಗಳನ್ನು ಮತ್ತು ಡಿಪ್ಲೋಮೊಗಳನ್ನು ಪ್ರದಾನ ಮಾಡಲು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**15. ಕುಲಾಧಿಪತಿಗಳು.-** (1) ಕುಲಾಧಿಪತಿಯವರನ್ನು ಪ್ರಾಯೋಜಕ ಸಂಸ್ಥೆಯು ನೇಮಿಸತಕ್ಕದ್ದು.

(2) ಪ್ರಾಯೋಜಕ ಸಂಸ್ಥೆಯ ಟ್ರಸ್ಟಿಯು ಮೊದಲನೇ ಕುಲಾಧಿಪತಿಗಳಾಗಿರತಕ್ಕದ್ದು, ಅವರು ತಮ್ಮ ಜೀವನಪರ್ಯಂತ ಅಥವಾ ಅವರು ತಮ್ಮ ಪದವನ್ನು ಬಿಟ್ಟುಕೊಡುವವರೆಗೆ ಕುಲಾಧಿಪತಿಗಳಾಗಿ ಪದಧಾರಣ ಮಾಡಿರತಕ್ಕದ್ದು.

(3) ತದನಂತರದ ಕುಲಾಧಿಪತಿಗಳು, ಪ್ರಾಯೋಜಕ ಸಂಸ್ಥೆಯ ವ್ಯವಸ್ಥಾಪನಾ ಸಮಿತಿಯ ಟ್ರಸ್ಟಿಯಾಗಿರತಕ್ಕದ್ದು.

(4) ಪ್ರಾಯೋಜಕ ಸಂಸ್ಥೆಯು ಸಹ-ಕುಲಾಧಿಪತಿಯನ್ನು ನೇಮಿಸಬಹುದು. ಆತನು ಪ್ರಾಯೋಜಿಕ ಸಂಸ್ಥೆಯ ಟ್ರಸ್ಟಿಯಾಗಿತಕ್ಕದ್ದು.

(5) ಹಾಗೆ ನೇಮಕಗೊಂಡ ತದನಂತರದ ಕುಲಾಧಿಪತಿಗಳು ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ಪದಧಾರಣ ಮಾಡತಕ್ಕದ್ದು.

(6) ಕುಲಾಧಿಪತಿಗಳು ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳ ಅಡಿಯಲ್ಲಿ ಅವರಿಗೆ ಪ್ರದಾನ ಮಾಡಬಹುದಾದಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು, ಅವುಗಳಲ್ಲಿ ಈ ಮುಂದಿನ ಅಧಿಕಾರಗಳು ಒಳಗೊಂಡಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಮುಖ್ಯಸ್ಥರಾಗಿ ಕಾರ್ಯ ನಿರ್ವಹಿಸುವುದು;

(ii) ಸಂದರ್ಶಕರ ಮತ್ತು ಸಹ-ಸಂದರ್ಶಕರಿಬ್ಬರ ಗೈರುಹಾಜರಿಯಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಘಟಿಕೋತ್ಸವಗಳಲ್ಲಿ ಅಧ್ಯಕ್ಷತೆಯನ್ನು ವಹಿಸುವುದು;

(iii) ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವುದು;

(iv) ಈ ಅಧಿನಿಯಮ ಮತ್ತು ಪರಿನಿಯಮಗಳ ಉಪಬಂಧಗಳಿಗೆ ಅನುಸಾರವಾಗಿ ಸಹ-ಕುಲಾಧಿಪತಿಗಳು, ಕುಲಪತಿಗಳನ್ನು ನೇಮಿಸುವುದು ಅಥವಾ ಪುನರ್ನೇಮಿಸುವುದು ಅಥವಾ ಅವರ ನೇಮಕಾತಿಯನ್ನು ಅಂತ್ಯಗೊಳಿಸುವುದು;

(v) ಸಹಕುಲಪತಿಗಳು, ಡೀನ್, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿಗಳ ನೇಮಕಾತಿಯನ್ನು ಪೂರ್ವಾನುಮೋದಿಸುವುದು;

(vi) ಮೊದಲ ಸಹಕುಲಪತಿಗಳನ್ನು ಹಾಗೂ ಹಣಕಾಸು ಅಧಿಕಾರಿಯನ್ನು ನೇಮಿಸುವುದು;

(vii) ಮೊದಲ ವ್ಯವಸ್ಥಾಪನಾ ಮಂಡಳಿ, ಹಣಕಾಸು ಸಮಿತಿ, ಸಂಶೋಧನಾ ಪರಿಷತ್ತು ಹಾಗೂ ಶೈಕ್ಷಣಿಕ ಪರಿಷತ್ತುಗಳನ್ನು ರಚಿಸುವುದು;

(viii) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ ಕಾರ್ಯಸೂಚಿ ವಿಷಯಗಳನ್ನು ಪೂರ್ವಾನುಮೋದಿಸುವುದು; ಮತ್ತು

(ix) ಈ ಅಧಿನಿಯಮದಲ್ಲಿ ಉಪಬಂಧಿಸಿದ ವಿಧಾನದಲ್ಲಿ (ಪ್ರಬಂಧಕ ಮಂಡಳಿಯ ಸಭೆಯಲ್ಲಿ ಉಂಟಾದ ವಿವಾದಗಳನ್ನು ಹೊರತುಪಡಿಸಿ) ವಿವಾದಗಳನ್ನು ಪರಿಹರಿಸುವುದು.

(7) ಪದಾಧಿಕಾರಿ ಅಥವಾ ಸಂಸ್ಥೆ ಮತ್ತು ವಿಶ್ವವಿದ್ಯಾಲಯದ ಯಾವುದೇ ಇತರ ಪದಾಧಿಕಾರಿ ಅಥವಾ ಸಂಸ್ಥೆಯ ನಡುವೆ ವಿವಾದಗಳು ಉಂಟಾದಲ್ಲಿ, ಆ ವಿವಾದವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿವಾದದ ಸಂಬಂಧದಲ್ಲಿ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**16. ಸಹ-ಕುಲಾಧಿಪತಿಗಳು.-** (1) ಪರಿನಿಯಮಗಳಲ್ಲಿ ಹೇಳಬಹುದಾದ ಅಂಥ ಇತರ ನಿಬಂಧನೆಗಳು ಮತ್ತು ಷರತ್ತುಗಳಿಗೆ ಒಳಪಟ್ಟು ಪ್ರಾಯೋಜಕ ಸಂಸ್ಥೆಯು ನಿಯಮಿಸಿದ ಅವಧಿಗಾಗಿ, ಪ್ರಾಯೋಜಕ ಸಂಸ್ಥೆಯು ಸಹ-ಕುಲಾಧಿಪತಿಗಳನ್ನು ನೇಮಕ ಮಾಡತಕ್ಕದ್ದು.

(2) ಸಹ-ಕುಲಾಧಿಪತಿಯು, ಕುಲಾಧಿಪತಿಯ ಗೈರುಹಾಜರಿಯಲ್ಲಿ ಆತನ ಎಲ್ಲಾ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಕುಲಾಧಿಪತಿಯ ಲಿಖಿತ ಅನುಮೋದನೆಯೊಂದಿಗೆ ಆತನಿಗೆ ಯಾವುದೇ ಹೆಚ್ಚುವರಿ ಕರ್ತವ್ಯಗಳನ್ನು ವಹಿಸತಕ್ಕದ್ದು.

(3) ಸಹ-ಕುಲಾಧಿಪತಿಯು, ಕುಲಾಧಿಪತಿಯ ಗೈರು ಹಾಜರಿಯಲ್ಲಿ ಎಲ್ಲಾ ಸಮಿತಿಗಳು, ಸಭೆಗಳು ಮತ್ತು ಘಟಿಕೋತ್ಸವದ ಅಧ್ಯಕ್ಷತೆ ವಹಿಸತಕ್ಕದ್ದು.

**17. ಕುಲಪತಿಗಳು.-** (1) (2)ನೇ ಉಪಪ್ರಕರಣದ ಉಪಬಂಧಗಳಿಗೆ ಅನುಸಾರವಾಗಿ ನಾಮನಿರ್ದೇಶಕ ಸಮಿತಿಯು ಶಿಫಾರಸ್ಸು ಮಾಡಿದ ಮೂರು ವ್ಯಕ್ತಿಗಳ ಪೈಕಿಯಿಂದ ಒಬ್ಬರನ್ನು ಮೂರು ವರ್ಷಗಳ ಅವಧಿಗಾಗಿ ಕುಲಪತಿಗಳನ್ನಾಗಿ, ಪರಿನಿಯಮಗಳಲ್ಲಿ ನಿಯಮಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಕುಲಾಧಿಪತಿಯವರು ನೇಮಿಸತಕ್ಕದ್ದು. ಮೂರು

ವರ್ಷಗಳ ಅವಧಿಯು ಮುಗಿದ ತರುವಾಯ, ಇದನ್ನು ಮೂರು ವರ್ಷಗಳ ಮತ್ತೊಂದು ಅವಧಿಗೆ ನವೀಕರಿಸಬಹುದು:

ಪರಂತು, ಕುಲಪತಿಯವರು, ತಮ್ಮ ಅವಧಿ ಮುಗಿದ ನಂತರವೂ ಹೊಸ ಕುಲಪತಿಯವರು ಸೇರಿಕೊಳ್ಳುವವರೆಗೆ ಪದದಲ್ಲಿ ಮುಂದುವರೆಯತಕ್ಕದ್ದು. ಆದಾಗ್ಯೂ ಈ ಅವಧಿಯು ಯಾವುದೇ ಸಂದರ್ಭದಲ್ಲಿ ಒಂದು ವರ್ಷವನ್ನು ಮೀರತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಲ್ಲಿ ಹೇಳಿರುವ ನಾಮನಿರ್ದೇಶಕ ಸಮಿತಿಯಲ್ಲಿ ಈ ಮುಂದಿನ ವ್ಯಕ್ತಿಗಳು ಇರತಕ್ಕದ್ದು, ಎಂದರೆ:-

(i) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಒಬ್ಬ ವ್ಯಕ್ತಿ;

(ii) ಪ್ರಬಂಧಕ ಮಂಡಳಿಯ ಇಬ್ಬರು ನಾಮ ನಿರ್ದೇಶಿತರು, ಇವರಲ್ಲಿ ಒಬ್ಬರನ್ನು ಪ್ರಬಂಧಕ ಮಂಡಳಿಯು ಸಮಿತಿಯ ಸಂಚಾಲಕರೆಂದು ನಾಮನಿರ್ದೇಶಿಸತಕ್ಕದ್ದು.

(3) ನಾಮನಿರ್ದೇಶನ ಸಮಿತಿಯು, ಅರ್ಹತೆಯ ಆಧಾರದ ಮೇಲೆ ಕುಲಪತಿಯ ಹುದ್ದೆಗೆ ಸೂಕ್ತವಾದ ಮೂರು ವ್ಯಕ್ತಿಗಳ ಹೆಸರನ್ನು ಶಿಫಾರಸ್ಸು ಮಾಡತಕ್ಕದ್ದು ಮತ್ತು ಅದನ್ನು ಪ್ರತಿಯೊಬ್ಬ ವ್ಯಕ್ತಿಯ ವಿದ್ಯಾರ್ಹತೆ ಮತ್ತಿತರ ವಿಶಿಷ್ಟ ಪ್ರಶಸ್ತಿಗಳನ್ನು ತಿಳಿಸುವ ಒಂದು ಸಂಕ್ಷಿಪ್ತ ವರದಿಯೊಂದಿಗೆ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು.

(4) ಕುಲಪತಿಯವರು ವಿಶ್ವವಿದ್ಯಾಲಯದ ಪ್ರಧಾನ ಕಾರ್ಯನಿರ್ವಾಹಕ ಮತ್ತು ಶೈಕ್ಷಣಿಕ ಅಧಿಕಾರಿಯಾಗಿರತಕ್ಕದ್ದು ಮತ್ತು ವಿಶ್ವವಿದ್ಯಾಲಯದ ವ್ಯವಹಾರಗಳ ಬಗ್ಗೆ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣವನ್ನು ಚಲಾಯಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯದ ಪ್ರಾಧಿಕಾರಗಳ ತೀರ್ಮಾನಗಳನ್ನು ಜಾರಿಗೊಳಿಸತಕ್ಕದ್ದು:

ಪರಂತು, ಶಿಕ್ಷಕರ ನೇಮಕಾತಿಯನ್ನು ಹೊರತುಪಡಿಸಿ ಕೂಡಲೇ ಕ್ರಮವನ್ನು ಕೈಗೊಳ್ಳಬೇಕಾದ ತುರ್ತು ಸ್ವರೂಪದ ಯಾವುದೇ ಇತರ ವಿಷಯಗಳಲ್ಲಿ ಮತ್ತು ಅದನ್ನು ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ವಿಶ್ವವಿದ್ಯಾಲಯವು ಇದಕ್ಕಾಗಿ ಅಧಿಕೃತಗೊಳಿಸಿದ್ದ ಯಾವೊಬ್ಬ ಅಧಿಕಾರಿ ಅಥವಾ ಪ್ರಾಧಿಕಾರ ಅಥವಾ ಇತರ ಸಂಸ್ಥೆಯು ಕೂಡಲೇ ಕ್ರಮಕೈಗೊಳ್ಳುವುದು ಸಾಧ್ಯವಿರದಿರುವಾಗ ಕುಲಪತಿಯವರು ತಾನು ಸೂಕ್ತವೆಂದು ಭಾವಿಸಬಹುದಾದಂಥ ಕ್ರಮವನ್ನು ಕುಲಾಧಿಪತಿಯವರ ಲಿಖಿತ ಪೂರ್ವಾನುಮೋದನೆಯನ್ನು ಪಡೆದು ಕೈಗೊಳ್ಳತಕ್ಕದ್ದು.

(5) ಕುಲಪತಿಯವರು ಪರಿನಿಯಮಗಳು ಅಥವಾ ನಿಯಮಗಳಲ್ಲಿ ಹೇಳಲಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು:

ಪರಂತು, ಕುಲಪತಿಗಳ ಅಭಿಪ್ರಾಯದಲ್ಲಿ, ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಯಾವುದೇ ನಿರ್ಣಯವು, ಈ ಅಧಿನಿಯಮ ಅಥವಾ ಅದರಡಿಯಲ್ಲಿ ರಚಿಸಿದ ಪರಿನಿಯಮಗಳು, ವಿನಿಯಮಗಳು ಅಥವಾ ನಿಯಮಗಳ ಮೂಲಕ ಪ್ರದತ್ತವಾದ ಅಧಿಕಾರದ ಹೊರಗಿದ್ದರೆ ಅಥವಾ ವಿಶ್ವವಿದ್ಯಾಲಯದ ಹಿತಾಸಕ್ತಿಗೆ ಪ್ರತಿಕೂಲವಾಗಬಹುದಾಗಿದ್ದರೆ, ಅದರ ನಿರ್ಣಯದ ದಿನಾಂಕದಿಂದ ಹದಿನೈದು ದಿನಗಳ ಒಳಗೆ ತನ್ನ ನಿರ್ಣಯವನ್ನು ಪರಿಷ್ಕರಿಸಲು ಸಂಬಂಧಪಟ್ಟ ಪ್ರಾಧಿಕಾರವನ್ನು ಆತನು ಕೋರತಕ್ಕದ್ದು ಮತ್ತು ಪ್ರಾಧಿಕಾರವು ಅಂಥ ನಿರ್ಣಯವನ್ನು ಸಂಪೂರ್ಣವಾಗಿ ಅಥವಾ ಭಾಗಶ:ವಾಗಿ ಪರಿಷ್ಕರಿಸಲು ನಿರಾಕರಿಸಿದ ಸಂದರ್ಭದಲ್ಲಿ ಅಥವಾ ಹದಿನೈದು ದಿನಗಳೊಳಗೆ ಯಾವುದೇ ನಿರ್ಣಯವನ್ನು ತೆಗೆದುಕೊಳ್ಳಲು ವಿಫಲವಾದಲ್ಲಿ, ನಂತರ ಅಂಥ ವಿಷಯವನ್ನು ಕುಲಾಧಿಪತಿಗಳಿಗೆ ಕಳುಹಿಸತಕ್ಕದ್ದು ಮತ್ತು ಈ ಬಗ್ಗೆ ಇವರ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

(6) ಪ್ರಬಂಧಕ ಮಂಡಳಿಯ ಅನುಮೋದನೆಯೊಂದಿಗೆ ಮತ್ತು ನೈಸರ್ಗಿಕ ನ್ಯಾಯದ ತತ್ವಗಳನ್ನು ಅನುಸರಿಸಿದ ನಂತರ ಹಾಗೂ ಶಿಸ್ತಿನ ಆಧಾರದ ಮೇಲೆ ಅಂತ್ಯಗೊಳಿಸುವ ಸಂದರ್ಭವೂ ಸೇರಿದಂತೆ, ಪ್ರಕರಣದ ಬಗ್ಗೆ ಕುಲಪತಿಯು ತನ್ನ ಅಹವಾಲನ್ನು ಹೇಳಿಕೊಳ್ಳಲು

ಸೂಕ್ತ ಅವಕಾಶವನ್ನು ನೀಡಿದ ತರುವಾಯ, ಕುಲಾಧಿಪತಿಯವರು, ಕುಲಪತಿಯವರ ಸೇವೆಗಳನ್ನು ಅಂತ್ಯಗೊಳಿಸಬಹುದು.

(7) ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಸಂದರ್ಶಕರು, ಸಹ-ಸಂದರ್ಶಕರು, ಕುಲಾಧಿಪತಿಯವರು ಮತ್ತು ಸಹ-ಕುಲಾಧಿಪತಿಯವರು ಇವರುಗಳ ಗೈರು ಹಾಜರಿಯ ಸಂದರ್ಭದಲ್ಲಿ ಕುಲಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

**18. ಸಹಕುಲಪತಿಗಳು.-** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಮೂರು ಜನರನ್ನು ಮೀರದಂತೆ ಸಹಕುಲಪತಿಗಳನ್ನು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**19. ವ್ಯಾಸಂಗ ವಿಭಾಗಗಳ ಡೀನ್‌ಗಳು.-** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು ಪರಿನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವ್ಯಾಸಂಗ ವಿಭಾಗಗಳ ಡೀನ್‌ಗಳನ್ನು ನೇಮಕಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**20. ಕುಲಸಚಿವರು.-** (1) ಕುಲಾಧಿಪತಿಯವರು, ಪರಿನಿಯಮಗಳ ಮೂಲಕ ನಿಯಮಿಸಬಹುದಾದಂಥ ವಿಧಾನದಲ್ಲಿ ಮತ್ತು ಅಂಥ ನಿಬಂಧನೆ ಮತ್ತು ಷರತ್ತುಗಳ ಮೇಲೆ ಕುಲಸಚಿವರನ್ನು ನೇಮಕ ಮಾಡತಕ್ಕದ್ದು.

(2) ಪರಿನಿಯಮಗಳಲ್ಲಿ ಪರಿಭಾಷಿಸಿರುವಂಥ ಎಲ್ಲಾ ಕರಾರುಗಳನ್ನು ವಿಶ್ವವಿದ್ಯಾಲಯದ ಪರವಾಗಿ ಕುಲಸಚಿವರು ಮಾಡಿಕೊಳ್ಳತಕ್ಕದ್ದು ಮತ್ತು ಅದಕ್ಕೆ ಸಹಿ ಹಾಕತಕ್ಕದ್ದು.

(3) ಕುಲಸಚಿವರು ವಿಶ್ವವಿದ್ಯಾಲಯದ ಪರವಾಗಿ ದಾಖಲೆಗಳನ್ನು ಅಧಿಕೃತಗೊಳಿಸುವ ಅಧಿಕಾರವನ್ನು ಹೊಂದಿರತಕ್ಕದ್ದು ಹಾಗೂ ಪರಿನಿಯಮಗಳಿಂದ ಪ್ರದತ್ತಗೊಳಿಸಬಹುದಾದಂಥ ಅಥವಾ ಕುಲಾಧಿಪತಿಯವರು, ಅಥವಾ ಕುಲಪತಿಯವರು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದ ಅಂಥ ಇತರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಇತರ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

(4) ಕುಲಸಚಿವರು ವಿಶ್ವವಿದ್ಯಾಲಯದ ದಾಖಲೆಗಳು ಮತ್ತು ಸಾಮಾನ್ಯ ಮೊಹರನ್ನು ಸರಿಯಾದ ರೀತಿಯಲ್ಲಿ ರಕ್ಷಿಸಿಕೊಂಡು ಬರುವ ಹೊಣೆಗಾರಿಕೆಯನ್ನು ಹೊಂದಿರತಕ್ಕದ್ದು ಮತ್ತು ಕುಲಾಧಿಪತಿಯವರು, ಕುಲಪತಿಯವರು ಅಥವಾ ಇತರ ಯಾವುದೇ ಪ್ರಾಧಿಕಾರವು ಕೋರಿದಂಥ ಎಲ್ಲಾ ಅಂಥ ಮಾಹಿತಿಯನ್ನು ಮತ್ತು ದಾಖಲೆಗಳನ್ನು ಅವರ ಮುಂದೆ ಮಂಡಿಸಲು ಬದ್ಧರಾಗಿತಕ್ಕದ್ದು.

**21. ಹಣಕಾಸು ಅಧಿಕಾರಿ.-** ಕುಲಪತಿಯವರು, ಕುಲಾಧಿಪತಿಯವರ ಲಿಖಿತ ಅನುಮೋದನೆಯನ್ನು ಪಡೆದುಕೊಂಡು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಹಣಕಾಸು ಅಧಿಕಾರಿಯನ್ನು ನೇಮಕ ಮಾಡತಕ್ಕದ್ದು ಮತ್ತು ಅವರು ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಹಾಗೂ ಅಂಥ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು.

**22. ಇತರ ಅಧಿಕಾರಿಗಳು.-** ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ ನೇಮಕಾತಿಯ ವಿಧಾನ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಕರ್ತವ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

## ಅಧ್ಯಾಯ - IV
## ವಿಶ್ವವಿದ್ಯಾಲಯದ ಪ್ರಾಧಿಕಾರಗಳು

**23. ವಿಶ್ವವಿದ್ಯಾಲಯದ ಪ್ರಾಧಿಕಾರಗಳು.-** ಈ ಮುಂದಿನವುಗಳು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾಗಿರತಕ್ಕದ್ದು, ಎಂದರೆ:-

(i) ಪ್ರಬಂಧಕ ಮಂಡಳಿ;

(ii) ವ್ಯವಸ್ಥಾಪನಾ ಮಂಡಳಿ;

(iii) ಶೈಕ್ಷಣಿಕ ಪರಿಷತ್ತು;

(iv) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು;

(v) ಹಣಕಾಸು ಸಮಿತಿ; ಮತ್ತು

(vi) ವಿಶ್ವವಿದ್ಯಾಲಯದ ಪ್ರಾಧಿಕಾರಗಳೆಂದು ಪರಿನಿಯಮಗಳ ಮೂಲಕ ಘೋಷಿಸಬಹುದಾದ ಅಂಥ ಇತರ ಪ್ರಾಧಿಕಾರಗಳು.

**24. ಪ್ರಬಂಧಕ ಮಂಡಳಿ ಮತ್ತು ಇದರ ಅಧಿಕಾರಗಳು.-**(1) ಪ್ರಬಂಧಕ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಾಧಿಪತಿಯವರು - ಅಧ್ಯಕ್ಷರು;

(ii) ಸಹ-ಕುಲಾಧಿಪತಿಯವರು - ಸದಸ್ಯರು;

(iii) ಕುಲಪತಿಯವರು - ಸದಸ್ಯರು;

(iv) ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಅಥವಾ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಅಥವಾ ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಆತನ ನಾಮನಿರ್ದೇಶಿತ – ಪದನಿಮಿತ್ತ ಸದಸ್ಯರು ;

(v) ರಾಜ್ಯ ಸರ್ಕಾರವು ನಾಮ ನಿರ್ದೇಶನ ಮಾಡಿದ ಆಡಳಿತವನ್ನು ಒಳಗೊಂಡಂತೆ ವ್ಯವಸ್ಥಾಪನೆ, ಹಣಕಾಸು ಅಥವಾ ಯಾವುದೇ ಇತರ ವಿಶೇಷ ಕ್ಷೇತ್ರದಲ್ಲಿನ ಒಬ್ಬರು ತಜ್ಞರು-ಸದಸ್ಯರು;

(vi) ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶಿಸಿದ ಮೂವರು ವ್ಯಕ್ತಿಗಳು ಅವರ ಪೈಕಿ ಒಬ್ಬರು ಮಹಿಳೆಯಾಗಿರತಕ್ಕದ್ದು- ಸದಸ್ಯರು;

(vii) ಸಹ ಕುಲಪತಿಯವರು ಮತದಾನದ ಹಕ್ಕಿಲ್ಲದ ಸದಸ್ಯರಾಗಿರತಕ್ಕದ್ದು;

(viii) ವಿಶ್ವವಿದ್ಯಾಲಯ ಅನುದಾನ ಆಯೋಗದ ನಾಮನಿರ್ದೇಶಿತ ಒಬ್ಬ ಸುಪ್ರಸಿದ್ಧ ಶಿಕ್ಷಣ ತಜ್ಞರು – ಸದಸ್ಯರು;

(2) ಕುಲಸಚಿವರು ಪ್ರಬಂಧಕ ಮಂಡಳಿಯ ಮತದಾನದ ಹಕ್ಕಿರದ ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ಪ್ರಬಂಧಕ ಮಂಡಳಿಯ ಸದಸ್ಯರ ಪದಾವಧಿ, ಸರ್ಕಾರದಿಂದ ನಾಮನಿರ್ದೇಶಿತರಾದ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ನೇಮಕಾತಿ, ನವೀಕರಣ ಮತ್ತು ತೆಗೆದುಹಾಕುವುದು ಮುಂತಾದವುಗಳು ಪರಿನಿಯಮಗಳ ಮೂಲಕ ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಲ್ಲಿ ಕುಲಾಧಿಪತಿಯವರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅವರ ಗೈರುಹಾಜರಿಯಲ್ಲಿ ಕುಲಾಧಿಪತಿಯವರಿಂದ ನಾಮನಿರ್ದೇಶಿತರಾದ ಯಾರಾದರೂ ಒಬ್ಬರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು. ಅಂಥ ಸಭೆಯ ಅಧ್ಯಕ್ಷತೆಯನ್ನು ವಹಿಸುವುದಕ್ಕೆ ಕುಲಾಧಿಪತಿಯವರು ಯಾವೊಬ್ಬ ವ್ಯಕ್ತಿಯನ್ನೂ ನಾಮನಿರ್ದೇಶನ

ಮಾಡಿರದಿದ್ದಲ್ಲಿ, ಸಭೆಯಲ್ಲಿ ಹಾಜರಿರುವ ಸದಸ್ಯರು ಸರಳ ಬಹುಮತದ ಮೂಲಕ ಅವರುಗಳ ಪೈಕಿಯಿಂದಲೇ ಆ ಸಭೆಗೆ ಮಾತ್ರವೇ ಅಧ್ಯಕ್ಷನನ್ನು ಚುನಾಯಿಸತಕ್ಕದ್ದು.

(5) ಪ್ರಬಂಧಕ ಮಂಡಳಿಯ ಎಲ್ಲಾ ಸಭೆಗಳಿಗೆ, ಅಂಥ ಸಭೆಯಲ್ಲಿ ಹಾಜರಾಗುವ ಮತ್ತು ಮತದಾನ ನೀಡುವ ಮೂರು ಜನ ಸದಸ್ಯರು ಕೋರಂ ಆಗಿರತಕ್ಕದ್ದು:

ಪರಂತು, ಪ್ರಬಂಧಕ ಮಂಡಳಿಯ ಯಾವುದೇ ಸಭೆಯ ಕೋರಂ ಪೂರ್ಣವಾಗಬೇಕಾದರೆ ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು ಹಾಜರಿರುವುದು ಮತ್ತು ಕುಲಾಧಿಪತಿಯವರು ಅಥವಾ ಪ್ರಾಯೋಜಕ ಸಂಸ್ಥೆಯ ನಾಮನಿರ್ದೇಶಿತರು ಹಾಜರಾಗದೇ ಇದ್ದಾಗ ಕುಲಪತಿಯವರು ಹಾಜರಿರುವುದು ಯಾವಾಗಲೂ ಅವಶ್ಯವಾಗಿರತಕ್ಕದ್ದು.

(6) ಪ್ರಬಂಧಕ ಮಂಡಳಿಯು ವಿಶ್ವವಿದ್ಯಾಲಯದ ಪ್ರಧಾನ ಪ್ರಬಂಧಕ ಸಂಸ್ಥೆಯಾಗಿರತಕ್ಕದ್ದು ಮತ್ತು ಅದು ಈ ಮುಂದಿನ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯದ ಶಾಸನಬದ್ಧ ಲೆಕ್ಕಪರಿಶೋಧಕರನ್ನು ನೇಮಕಗೊಳಿಸುವುದು;

(ii) ವಿಶ್ವವಿದ್ಯಾಲಯವು ಅನುಸರಿಸಬೇಕಾದ ಕಾರ್ಯನೀತಿಗಳನ್ನು ರಚಿಸುವುದು;

(iii) ಈ ಅಧಿನಿಯಮದ ಅಥವಾ ಪರಿನಿಯಮಗಳ ಅಥವಾ ನಿಯಮಗಳ ಉಪಬಂಧಗಳಿಗೆ ಅನುಗುಣವಾಗಿ ಇರದ ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ತೀರ್ಮಾನಗಳನ್ನು ಪುನರೀಕ್ಷಿಸುವುದು;

(iv) ವಿಶ್ವವಿದ್ಯಾಲಯದ ಆಯವ್ಯಯ ಮತ್ತು ವಾರ್ಷಿಕ ವರದಿಗಳನ್ನು ಅನುಮೋದಿಸುವುದು;

(v) ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸುವುದು ಅಥವಾ ಈಗಾಗಲೇ ಇರುವ ಪರಿನಿಯಮಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವುದು ಅಥವಾ ನಿರಸನಗೊಳಿಸುವುದು;

(vi) ವಿಶ್ವವಿದ್ಯಾಲಯವನ್ನು ಸ್ವಯಂ ಸಮಾಪನಗೊಳಿಸುವ ನಿರ್ಧಾರವನ್ನು ತೆಗೆದುಕೊಳ್ಳುವುದು;

(vii) ಸರ್ಕಾರಕ್ಕೆ ಸಲ್ಲಿಸುವ ಪ್ರಸ್ತಾವಗಳನ್ನು ಅನುಮೋದಿಸುವುದು;

(viii) ಶುಲ್ಕ ನಿಯಂತ್ರಣ ಸಮಿತಿಗೆ ಮೂವರು ಸದಸ್ಯರನ್ನು ನಾಮನಿರ್ದೇಶನ ಮಾಡುವು ; ಮತ್ತು

(ix) ವಿಶ್ವವಿದ್ಯಾಲಯದ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದಕ್ಕೆ ಅಪೇಕ್ಷಣೀಯವೆಂದು ಕಂಡುಬರುವಂಥ ತೀರ್ಮಾನಗಳನ್ನು ಮತ್ತು ಕ್ರಮಗಳನ್ನು ಕೈಗೊಳ್ಳುವುದು.

(7) ಪ್ರಬಂಧಕ ಮಂಡಳಿಯು ಒಂದು ವರ್ಷದಲ್ಲಿ ಕನಿಷ್ಠ ಮೂರು ಸಲ ಸಭೆ ಸೇರತಕ್ಕದ್ದು.

(8) ಪ್ರಬಂಧಕ ಮಂಡಳಿಯು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಸಮಯ ಮತ್ತು ಸ್ಥಳದಲ್ಲಿ ಸಭೆ ಸೇರತಕ್ಕದ್ದು.

**25. ವ್ಯವಸ್ಥಾಪನಾ ಮಂಡಳಿ.-** (1) ವ್ಯವಸ್ಥಾಪನಾ ಮಂಡಳಿಯು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಗಳು;

(ii) ಸಹಕುಲಪತಿಗಳು;

(iii) ಕುಲಸಚಿವರು;

(iv) ಪ್ರಾಯೋಜಕ ಸಂಸ್ಥೆಯ ಇಬ್ಬರು ನಾಮನಿರ್ದೇಶಿತರು;

(v) ಕುಲಪತಿಗಳು ನಾಮನಿರ್ದೇಶಿಸಬಹುದಾದ ಇಬ್ಬರು ಡೀನ್‌ಗಳು;

(2) ಕುಲಪತಿಯವರು ವ್ಯವಸ್ಥಾಪನಾ ಮಂಡಳಿಯ ಅಧ್ಯಕ್ಷರಾಗಿರತಕ್ಕದ್ದು ಮತ್ತು ಕುಲಸಚಿವರು ವ್ಯವಸ್ಥಾಪನಾ ಮಂಡಳಿಯ ಕಾರ್ಯದರ್ಶಿಯಾಗಿರತಕ್ಕದ್ದು.

(3) ವ್ಯವಸ್ಥಾಪನಾ ಮಂಡಳಿಯು ವಿಶ್ವವಿದ್ಯಾಲಯದ ಕಾರ್ಯಕಾರಿ ಸಂಸ್ಥೆಯಾಗಿರತಕ್ಕದ್ದು. ವ್ಯವಸ್ಥಾಪನಾ ಮಂಡಳಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳು ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ವ್ಯವಸ್ಥಾಪನಾ ಮಂಡಳಿಯ ಎಲ್ಲಾ ಸಭೆಗಳಲ್ಲಿ ಯಾವಾಗಲೂ ಕುಲಪತಿಯವರು ಅಧ್ಯಕ್ಷತೆ ವಹಿಸತಕ್ಕದ್ದು ಹಾಗೂ ಕುಲಪತಿಯವರ ಗೈರುಹಾಜರಿಯಲ್ಲಿ ಪ್ರಾಯೋಜಕ ಸಂಸ್ಥೆಯು ನಾಮನಿರ್ದೇಶನ ಮಾಡಿದವರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಪ್ರಾಯೋಜಕ ಸಂಸ್ಥೆಯು ಯಾರನ್ನೂ ನಾಮನಿರ್ದೇಶನ ಮಾಡದೇ ಇದ್ದ ಸಂದರ್ಭದಲ್ಲಿ ಸಭೆಯಲ್ಲಿ ಹಾಜರಿರುವ ಸದಸ್ಯರು ಚುನಾಯಿಸಿದ ಯಾವುದೇ ಇತರ ಸದಸ್ಯರು ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(5) ವ್ಯವಸ್ಥಾಪನಾ ಮಂಡಳಿಯ ಸಭೆಯಲ್ಲಿ ಯಾವುದೇ ವಿಷಯವನ್ನು ಕುರಿತು ವಿವಾದ ಉಂಟಾದಲ್ಲಿ ಸದರಿ ವಿಷಯವನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯದ ಬಗ್ಗೆ ಕುಲಾಧಿಪತಿಯವರ ತೀರ್ಮಾನವು ಅಂತಿಮವಾಗಿರತಕ್ಕದ್ದು ಮತ್ತು ಅದಕ್ಕೆ ವಿಶ್ವವಿದ್ಯಾಲಯವು ಬದ್ಧವಾಗಿರತಕ್ಕದ್ದು.

**26. ಶೈಕ್ಷಣಿಕ ಪರಿಷತ್ತು.**-(1) ಶೈಕ್ಷಣಿಕ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಯವರು - ಅಧ್ಯಕ್ಷರು

(ii) ಸಹಕುಲಪತಿಯವರು - ಸದಸ್ಯರು

(iii) ಕುಲಸಚಿವರು - ಕಾರ್ಯದರ್ಶಿಗಳು

(iv) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಶೈಕ್ಷಣಿಕ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಶೈಕ್ಷಣಿಕ ಸಂಸ್ಥೆಯಾಗಿರ ತಕ್ಕದ್ದು ಮತ್ತು ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಹಾಗೂ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಶೈಕ್ಷಣಿಕ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಬಗ್ಗೆ ಸಾಮಾನ್ಯ (ಸರಿಪಡಿಸಿ) ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**27. ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು.**- (1) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ವಿಶ್ವವಿದ್ಯಾಲಯದ ಪ್ರಧಾನ ಸಂಶೋಧನಾ ಮತ್ತು ಅನ್ವೇಷಣಾ ಸಮಿತಿಯಾಗಿರತಕ್ಕದ್ದು ಹಾಗೂ ಸಂಶೋಧನಾ ಕ್ಷೇತ್ರಗಳ ಆದ್ಯತೆಯೂ ಒಳಗೊಂಡಂತೆ, ವಿಶ್ವವಿದ್ಯಾಲಯವು ಕೈಗೊಳ್ಳಬೇಕಾದ ಸಂಶೋಧನೆಯ ಬಗ್ಗೆ ಒಂದು ವ್ಯಾಪಕವಾದ ಪರಿಪೂರ್ಣ ಭವಿಷ್ಯದ ದೃಷ್ಟಿಯನ್ನು ಒದಗಿಸತಕ್ಕದ್ದು. ಈ ಪರಿಷತ್ತು, ಈ ಅಧಿನಿಯಮದ, ಪರಿನಿಯಮಗಳ, ವಿನಿಯಮಗಳ ಮತ್ತು ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ವಿಶ್ವವಿದ್ಯಾಲಯದ ಸಂಶೋಧನೆ ಮತ್ತು ಅನ್ವೇಷಣಾ ಕಾರ್ಯನೀತಿಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಅದರ ಪ್ರಧಾನ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

(2) ಸಂಶೋಧನಾ ಮತ್ತು ಅನ್ವೇಷಣಾ ಪರಿಷತ್ತು ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಪತಿಯವರು - ಅಧ್ಯಕ್ಷರು

(ii) ಸಹಕುಲಪತಿಯವರು - ಸದಸ್ಯರು

(iii) ಸಂಶೋಧನೆಯ ಡೀನ್ - ಕಾರ್ಯದರ್ಶಿ

(iv) ಅನ್ವೇಷಣಾ ವಿಭಾಗದ ಮುಖ್ಯಸ್ಥರು - ಸದಸ್ಯರು

(v) ಎಲ್ಲಾ ವ್ಯಾಸಂಗ ವಿಭಾಗಗಳ ಡೀನ್‌ಗಳು - ಸದಸ್ಯರು

(vi) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

**28. ಹಣಕಾಸು ಸಮಿತಿ.-** (1) ಹಣಕಾಸು ಸಮಿತಿ ಈ ಮುಂದಿನವರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಕುಲಾಧಿಪತಿಯವರು ಅಥವಾ ಅವರ ನಾಮನಿರ್ದೇಶಿತರು - ಅಧ್ಯಕ್ಷರು

(ii) ಸಹ-ಕುಲಾಧಿಪತಿಯವರು - ಸದಸ್ಯರು

(iii) ಕುಲಪತಿಯವರು - ಸದಸ್ಯರು

(iv) ಕುಲಸಚಿವರು - ಸದಸ್ಯರು

(v) ಹಣಕಾಸು ಅಧಿಕಾರಿ - ಕಾರ್ಯದರ್ಶಿ

(vi) ಪ್ರಾಯೋಜಕ ಸಂಸ್ಥೆಯ ಒಬ್ಬ ನಾಮನಿರ್ದೇಶಿತರು - ಸದಸ್ಯರು

(vii) ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಇತರ ಸದಸ್ಯರು.

(2) ಹಣಕಾಸು ಸಮಿತಿಯು ಹಣಕಾಸಿನ ವಿಷಯಗಳನ್ನು ನೋಡಿಕೊಳ್ಳುವ ವಿಶ್ವವಿದ್ಯಾಲಯದ ಪ್ರಧಾನ ಹಣಕಾಸು ಸಂಸ್ಥೆಯಾಗಿರತಕ್ಕದ್ದು ಹಾಗೂ ಅದು ಈ ಅಧಿನಿಯಮ, ನಿಯಮಗಳು ಮತ್ತು ಪರಿನಿಯಮಗಳ ಉಪಬಂಧಗಳಿಗೆ ಒಳಪಟ್ಟು ವಿಶ್ವವಿದ್ಯಾಲಯದ ಹಣಕಾಸು ವಿಷಯಗಳನ್ನು ಸಮನ್ವಯಗೊಳಿಸತಕ್ಕದ್ದು ಮತ್ತು ಸಾಮಾನ್ಯ ಮೇಲ್ವಿಚಾರಣೆಯನ್ನು ನಡೆಸತಕ್ಕದ್ದು.

**29. ಇತರ ಪ್ರಾಧಿಕಾರಗಳು.-** ವಿಶ್ವವಿದ್ಯಾಲಯದ ಇತರ ಪ್ರಾಧಿಕಾರಗಳ ರಚನೆ, ಅಧಿಕಾರಗಳು ಹಾಗೂ ಪ್ರಕಾರ್ಯಗಳು ಪರಿನಿಯಮಗಳಿಂದ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

**30. ಒಂದು ಪ್ರಾಧಿಕಾರದ ಅಥವಾ ಸಂಸ್ಥೆಯ ಸದಸ್ಯತ್ವಕ್ಕೆ ಅನರ್ಹತೆ.-** ವಿಶ್ವವಿದ್ಯಾಲಯದ ಸಂಸ್ಥೆಗಳ ಯಾವುವೇ ಪ್ರಾಧಿಕಾರಗಳ ಒಬ್ಬ ವ್ಯಕ್ತಿಯು,-

(ಎ) ಅಸ್ವಸ್ಥ ಚಿತ್ತನಾಗಿದ್ದು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿಸಲ್ಪಟ್ಟಿದ್ದರೆ;

(ಬಿ) ಅವಿಮುಕ್ತ ದಿವಾಳಿಯಾಗಿದ್ದರೆ;

(ಸಿ) ನೈತಿಕ ಅಧ:ಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದರೆ;

(ಡಿ) ಖಾಸಗಿ ಬೋಧನಾ ತರಗತಿಗಳನ್ನು ನಡೆಸುತ್ತಿದ್ದರೆ ಅಥವಾ ಸ್ವತ: ನಿರತನಾಗಿದ್ದರೆ;

(ಇ) ಯಾವುದೇ ವಿಧದಲ್ಲಿ, ಎಲ್ಲಿಯೇ, ಯಾವುದೇ ಪರೀಕ್ಷೆಯನ್ನು ನಡೆಸುವಲ್ಲಿ ಅನುಚಿತ ಅಭ್ಯಾಸದಲ್ಲಿ ತೊಡಗಿದ್ದಕ್ಕಾಗಿ ಅಥವಾ ಉತ್ತೇಜಿಸಿದ್ದಕ್ಕಾಗಿ ದಂಡಿತನಾಗಿದ್ದರೆ; ಮತ್ತು

(ಎಫ್) ಪ್ರಬಂಧಕ ಮಂಡಳಿಯು ಯಾವುವೇ ಪ್ರಾಧಿಕಾರಗಳ ಅಥವಾ ಸಂಸ್ಥೆಗಳ ಯಾವೊಬ್ಬ ಸದಸ್ಯನನ್ನು ಆ ಹುದ್ದೆಯನ್ನು ಹೊಂದಿರುವುದಕ್ಕೆ ಅರ್ಹನಲ್ಲನೆಂದು ಲಿಖಿತದಲ್ಲಿ ಅಭಿಪ್ರಾಯ ನೀಡಿದಾಗಲೆಲ್ಲಾ,

-ಸದಸ್ಯನಾಗಿರುವುದಕ್ಕೆ ಅನರ್ಹನಾಗತಕ್ಕದ್ದು.

**31. ಖಾಲಿಸ್ಥಾನ ಇರುವ ಕಾರಣದಿಂದಾಗಿ ವ್ಯವಹರಣೆಗಳು ಅಸಿಂಧುವಾಗತಕ್ಕದ್ದಲ್ಲ.-** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರದ ಕಾರ್ಯ ಅಥವಾ ವ್ಯವಹರಣೆಗಳು ಕೇವಲ ಅದರಲ್ಲಿ ಯಾವುದೇ ಖಾಲಿಸ್ಥಾನ ಇದೆ ಎಂಬ ಕಾರಣದಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣದಿಂದ ಮಾತ್ರವೇ ಅಸಿಂಧುವಾಗತಕ್ಕದ್ದಲ್ಲ.

**32. ಕಾರ್ಯಸೂಚಿ ವಿಷಯಗಳ ಬಗ್ಗೆ ಉಪಬಂಧಗಳು.-** (1) ಯಾವುವೇ ಕಾರ್ಯಸೂಚಿ ವಿಷಯಗಳನ್ನು ಕುಲಾಧಿಪತಿಯವರ ಪೂರ್ವಾನುಮೋದನೆಯನ್ನು ಪಡೆಯದೇ ಪ್ರಬಂಧಕ

ಮಂಡಳಿಯ ಅಥವಾ ವ್ಯವಸ್ಥಾಪನಾ ಮಂಡಳಿಯ ಅಥವಾ ಯಾವುದೇ ಸಮಿತಿಯ ಸಭೆಗಳ ಕಾರ್ಯಸೂಚಿ ವಿಷಯಗಳಲ್ಲಿ ಸೇರಿಸತಕ್ಕದ್ದಲ್ಲ ಅಥವಾ ಚರ್ಚೆಗೆ ತೆಗೆದುಕೊಳ್ಳತಕ್ಕದ್ದಲ್ಲ ಮತ್ತು ತೀರ್ಮಾನಿಸತಕ್ಕದ್ದಲ್ಲ.

(2) ಈ ಅಧಿನಿಯಮದ ಯಾವುದೇ ಉಪಬಂಧಗಳನ್ನು ಪಾಲಿಸದೆ ಇರುವ ಸಂದರ್ಭದಲ್ಲಿ, ಕುಲಾಧಿಪತಿಯವರು ವಿಶ್ವವಿದ್ಯಾಲಯದ ಯಾವುದೇ ಪದಾಧಿಕಾರಿ ಅಥವಾ ಸಂಸ್ಥೆಯು ತೆಗೆದುಕೊಂಡ ಎಲ್ಲಾ ತೀರ್ಮಾನಗಳನ್ನು ವಿಪರ್ಯಯಗೊಳಿಸುವ ಮೂಲಕ ಪರಿಹಾರ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಅಧಿಕಾರವನ್ನು ಎಲ್ಲಾ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಅಂಥ ಪರಿಹಾರ ಕ್ರಮದ ಪರಿಣಾಮವಾಗಿ ಅಧಿನಿಯಮದ ಉಪಬಂಧಗಳನ್ನು ಪಾಲಿಸದೇ ವಿಶ್ವವಿದ್ಯಾಲಯದ ಪದಾಧಿಕಾರಿ ಅಥವಾ ಸಂಸ್ಥೆಯು ಕೈಗೊಂಡಿದ್ದ ಎಲ್ಲಾ ಅಂಥ ಕ್ರಮಗಳು, ಮೊದಲಿನಿಂದಲೂ ಶೂನ್ಯ ಮತ್ತು ಅಕೃತ ಎಂದು ಭಾವಿಸತಕ್ಕದ್ದು ಹಾಗೂ ತತ್ಪರಿಣಾಮವಾಗಿ, ಉಪಬಂಧ ಪಾಲಿಸದೇ ಇದ್ದ ವಿಷಯ ಅಥವಾ ನಿರ್ಧಾರದ ಸಂಬಂಧದಲ್ಲಿ ಅದಕ್ಕೆ ಮುಂಚೆ ಇದ್ದ ವಸ್ತುಸ್ಥಿತಿಯೇ ಮುಂದುವರಿಯತಕ್ಕದ್ದು.

## ಅಧ್ಯಾಯ - V
## ಪರಿನಿಯಮಗಳು ಮತ್ತು ವಿನಿಯಮಗಳು

**33. ಪರಿನಿಯಮಗಳು.-** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಪರಿನಿಯಮಗಳು ವಿಶ್ವವಿದ್ಯಾಲಯಕ್ಕೆ ಮತ್ತು ಸಿಬ್ಬಂದಿಗೆ ಸಂಬಂಧಿಸಿದ ಎಲ್ಲಾ ಅಥವಾ ಯಾವುದೇ ವಿಷಯಕ್ಕೆ ಈ ಕೆಳಗಿನಂತೆ ಉಪಬಂಧ ಕಲ್ಪಿಸಬಹುದು, ಎಂದರೆ:-

(i) ವಿಶ್ವವಿದ್ಯಾಲಯದ ಪ್ರಾಧಿಕಾರಗಳ ಕಾರ್ಯಕಲಾಪಗಳನ್ನು ನಡೆಸುವ ಮತ್ತು ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸದಿರುವ ಸಂಸ್ಥೆಗಳ ರಚನೆಯ ಕಾರ್ಯವಿಧಾನ;

(ii) 52ನೇ ಪ್ರಕರಣಕ್ಕೆ ಒಳಪಟ್ಟು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ವಿಶ್ವವಿದ್ಯಾಲಯ ದತ್ತಿ ನಿಧಿ, ಸಾಮಾನ್ಯ ನಿಧಿ ಹಾಗೂ ಅಭಿವೃದ್ಧಿ ನಿಧಿಗಳ ನಿರ್ವಹಣೆ;

(iii) ಕುಲಪತಿಗಳು, ಕುಲಸಚಿವರು ಹಾಗೂ ಹಣಕಾಸು ಅಧಿಕಾರಿ ಇವರ ನೇಮಕಾತಿಯ ನಿಬಂಧನೆಗಳು ಹಾಗೂ ಷರತ್ತುಗಳು ಹಾಗೂ ಅವರ ಅಧಿಕಾರಗಳು ಮತ್ತು ಪ್ರಕಾರ್ಯಗಳು;

(iv) ವಿಶ್ವವಿದ್ಯಾಲಯದ ಇತರ ಅಧಿಕಾರಿಗಳ, ಅಧ್ಯಾಪಕರ ಮತ್ತು ನೌಕರರ ನೇಮಕಾತಿ ವಿಧಾನ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(v) ವಿಶ್ವವಿದ್ಯಾಲಯ ಹಾಗೂ ಅದರ ಅಧಿಕಾರಿಗಳು, ವ್ಯಾಸಂಗ ವಿಭಾಗದ (ಫ್ಯಾಕಲ್ಟಿ) ಸದಸ್ಯರು, ನೌಕರರು ಹಾಗೂ ವಿದ್ಯಾರ್ಥಿಗಳ ನಡುವೆ ಉಂಟಾದ ವಿವಾದಗಳನ್ನು ಪರಿಹರಿಸುವ ಕಾರ್ಯವಿಧಾನ;

(vi) ವಿಭಾಗಗಳು ಮತ್ತು ವ್ಯಾಸಂಗ ವಿಭಾಗಗಳ (ಫ್ಯಾಕಲ್ಟಿಗಳ) ಸೃಜನೆ, ರದ್ದತಿ ಅಥವಾ ಪುನಾರಚನೆ;

(vii) ಇತರ ವಿಶ್ವವಿದ್ಯಾಲಯಗಳು ಅಥವಾ ಉನ್ನತ ಕಲಿಕಾ ಸಂಸ್ಥೆಗಳ ಜೊತೆಯಲ್ಲಿ ಸಹಕರಿಸಬೇಕಾದ ರೀತಿ;

(viii) ಗೌರವ ಪದವಿಗಳ ನೀಡಿಕೆಯ ಕಾರ್ಯವಿಧಾನ;

(ix) ಉಚಿತ ಶಿಕ್ಷಣ (ಫ್ರಿಶಿಪ್) ಮತ್ತು ವಿದ್ಯಾರ್ಥಿವೇತನ ಮಂಜೂರಾತಿಗೆ ಸಂಬಂಧಿಸಿದ ಉಪಬಂಧಗಳು;

(x) ವಿವಿಧ ವ್ಯಾಸಂಗ ಕ್ರಮಗಳಲ್ಲಿನ ಸೀಟುಗಳ ಸಂಖ್ಯೆಗೆ ಸಂಬಂಧಿಸಿದ ಕಾರ್ಯನೀತಿಗಳು ಮತ್ತು ಅಂಥ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಕಾರ್ಯವಿಧಾನ;

(xi) ವಿವಿಧ ವ್ಯಾಸಂಗ ಕ್ರಮಗಳಿಗೆ ವಿದ್ಯಾರ್ಥಿಗಳಿಗೆ ವಿಧಿಸಬಹುದಾದ ಶುಲ್ಕಕ್ಕೆ ಸಂಬಂಧಿಸಿದ ಕಾರ್ಯನೀತಿ;

(xii) ಸಂಶೋಧನಾ ವೇತನಗಳು (ಫೆಲೋಶಿಪ್‌ಗಳು), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಉಚಿತ ಶಿಕ್ಷಣಗಳು, ಪದಕಗಳು ಹಾಗೂ ಬಹುಮಾನಗಳನ್ನು ಪ್ರಾರಂಭಿಸುವುದು;

(xiii) ಹುದ್ದೆಗಳ ಸೃಜನೆ ಮತ್ತು ರದ್ದತಿಗಾಗಿನ ಕಾರ್ಯವಿಧಾನ; ಮತ್ತು

(xiv) ಪ್ರಬಂಧಕ ಮಂಡಳಿಯು ನಿರ್ಧರಿಸಬಹುದಾದ ಅಥವಾ ಈ ಅಧಿನಿಯಮದ ಅಡಿಯಲ್ಲಿ ಪರಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬೇಕಾದ ಅಗತ್ಯತೆಯುಳ್ಳ ಯಾವುದೇ ಇತರ ವಿಷಯಗಳು.

**34. ಪರಿನಿಯಮಗಳ ರಚನೆ ವಿಧಾನ.-** (1) ವ್ಯವಸ್ಥಾಪನಾ ಮಂಡಳಿಯು ರಚಿಸಿದ ಮೊದಲ ಪರಿನಿಯಮಗಳನ್ನು ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ವ್ಯವಸ್ಥಾಪನಾ ಮಂಡಳಿಯು ಸಲ್ಲಿಸಿದ ಮೊದಲ ಪರಿನಿಯಮಗಳನ್ನು ಪ್ರಬಂಧಕ ಮಂಡಳಿಯು ಪರಿಗಣಿಸತಕ್ಕದ್ದು ಹಾಗೂ ತಾನು ಅವಶ್ಯವೆಂದು ಭಾವಿಸಬಹುದಾದ ಅಂಥ ಮಾರ್ಪಾಡುಗಳು, ಯಾವುದಾದರು ಇದ್ದಲ್ಲಿ, ಅವುಗಳೊಡನೆ ತನ್ನ ಅನುಮೋದನೆಯನ್ನು ನೀಡತಕ್ಕದ್ದು.

(3) ವಿಶ್ವವಿದ್ಯಾಲಯವು, ಪ್ರಬಂಧಕ ಮಂಡಳಿಯು ಅನುಮೋದಿಸಿದ ಮೊದಲ ಪರಿನಿಯಮಗಳನ್ನು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ಪ್ರಕಟಿಸತಕ್ಕದ್ದು ಮತ್ತು ತದನಂತರ ಮೊದಲ ಪರಿನಿಯಮಗಳ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**35. ಪರಿನಿಯಮಗಳ ತಿದ್ದುಪಡಿಯ ಅಧಿಕಾರ.-** ಪ್ರಬಂಧಕ ಮಂಡಳಿಯು ಹೊಸ ಅಥವಾ ಹೆಚ್ಚುವರಿ ಪರಿನಿಯಮಗಳನ್ನು ರಚಿಸಬಹುದು ಅಥವಾ ಪರಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ಅವನ್ನು ನಿರಸನಗೊಳಿಸಬಹುದು.

**36. ವಿನಿಯಮಗಳು.-** ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ವಿನಿಯಮಗಳು ಈ ಮುಂದಿನ ವಿಷಯಗಳಿಗೆ ಉಪಬಂಧಗಳನ್ನು ಕಲ್ಪಿಸಬಹುದು, ಎಂದರೆ:-

(i) ವಿಶ್ವವಿದ್ಯಾಲಯಕ್ಕೆ ವಿದ್ಯಾರ್ಥಿಗಳ ಪ್ರವೇಶ ಮತ್ತು ವಿದ್ಯಾರ್ಥಿ ಪಟ್ಟಿಯಲ್ಲಿ ಅವರುಗಳ ದಾಖಲಾತಿ ಹಾಗೂ ಮುಂದುವರಿಕೆ;

(ii) ವಿಶ್ವವಿದ್ಯಾಲಯದ ಎಲ್ಲಾ ಪದವಿಗಳು ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳಿಗಾಗಿ ನಿಗದಿಪಡಿಸತಕ್ಕ ವ್ಯಾಸಂಗ ಕ್ರಮಗಳು;

(iii) ಪದವಿಗಳ ಮತ್ತು ಇತರ ಶೈಕ್ಷಣಿಕ ಪ್ರಶಸ್ತಿಗಳ ಪ್ರದಾನ;

(iv) ಸಂಶೋಧನಾ ವೇತನಗಳು (ಫೆಲೋಶಿಪ್), ವಿದ್ಯಾರ್ಥಿವೇತನಗಳು, ಶಿಷ್ಯವೇತನಗಳು, ಪದಕಗಳು ಮತ್ತು ಬಹುಮಾನಗಳನ್ನು ನೀಡಲು ಷರತ್ತುಗಳು;

(v) ಪರೀಕ್ಷೆಗಳನ್ನು ನಡೆಸುವುದು ಹಾಗೂ ಪರೀಕ್ಷೆ ನಡೆಸುವ ಸಂಸ್ಥೆಗಳು, ಪರೀಕ್ಷಕರು, ಪರೀಕ್ಷಾ ಮೇಲ್ವಿಚಾರಕರು, ಟ್ಯಾಬುಲೇಟರ್‌ಗಳು ಮತ್ತು ಮಾಡರೇಟರ್‌ಗಳ ನೇಮಕಾತಿ ವಿಧಾನ ಮತ್ತು ಷರತ್ತುಗಳು ಹಾಗೂ ಅವರ ಕರ್ತವ್ಯಗಳು;

(vi) ವಿಶ್ವವಿದ್ಯಾಲಯದ ಪರೀಕ್ಷೆಗಳಿಗೆ, ಪದವಿಗಳಿಗೆ ಹಾಗೂ ಇತರ ಶೈಕ್ಷಣಿಕ ಪ್ರಶಸ್ತಿಗಳಿಗೆ ಪ್ರವೇಶಕ್ಕೆ ವಿಧಿಸತಕ್ಕ ಶುಲ್ಕ;

(vii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನಲ್ಲಿ ವಿದ್ಯಾರ್ಥಿಗಳ ನಿವಾಸಕ್ಕಾಗಿ ಷರತ್ತುಗಳು;

(viii) ವಿಶ್ವವಿದ್ಯಾಲಯ ಅಥವಾ ಒಂದು ಘಟಕ ಕಾಲೇಜಿನ ವಿದ್ಯಾರ್ಥಿಗಳಲ್ಲಿ ಶಿಸ್ತು ಪಾಲನೆ; ಮತ್ತು

(ix) ಈ ಅಧಿನಿಯಮದ ಅಡಿಯಲ್ಲಿನ ಪರಿನಿಯಮಗಳಲ್ಲಿ ಉಪಬಂಧ ಕಲ್ಪಿಸಬಹುದಾಂಥ ಇತರ ಎಲ್ಲಾ ವಿಷಯಗಳು.

**37. ವಿನಿಯಮಗಳ ರಚನೆ ವಿಧಾನ.-** ವಿನಿಯಮಗಳನ್ನು ಶೈಕ್ಷಣಿಕ ಪರಿಷತ್ತು ರಚಿಸತಕ್ಕದ್ದು ಹಾಗೂ ವ್ಯವಸ್ಥಾಪನಾ ಮಂಡಳಿಯು ಅನುಮೋದಿಸತಕ್ಕದ್ದು.

**38. ವಿನಿಯಮಗಳ ತಿದ್ದುಪಡಿಗೆ ಅಧಿಕಾರ.-** ವ್ಯವಸ್ಥಾಪನಾ ಮಂಡಳಿಯ ಅನುಮೋದನೆಯೊಡನೆ ಶೈಕ್ಷಣಿಕ ಪರಿಷತ್ತು ಹೊಸ ವಿನಿಯಮಗಳನ್ನು ಅಥವಾ ಹೆಚ್ಚುವರಿ ವಿನಿಯಮಗಳನ್ನು ರಚಿಸಬಹುದು ಅಥವಾ ವಿನಿಯಮಗಳ ತಿದ್ದುಪಡಿ ಮಾಡಬಹುದು ಅಥವಾ ನಿರಸನಗೊಳಿಸಬಹುದು.

**39. ಶುಲ್ಕ ನಿಗದಿ.-** (1) 9ನೇ ಪ್ರಕರಣದ ಪರಂತುಕದ ಅಡಿಯಲ್ಲಿ ರಾಜ್ಯ ಸರ್ಕಾರದ ಅಥವಾ ಅದರ ಏಜೆನ್ಸಿಯು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಮಾಡಲಾದ ಪ್ರವೇಶಗಳಲ್ಲಿ ವಿಶ್ವವಿದ್ಯಾಲಯದ ಎಲ್ಲಾ ಕೋರ್ಸುಗಳಲ್ಲಿನ ಶೇಕಡಾ ನಲವತ್ತರಷ್ಟು ಪ್ರವೇಶಗಳ ಸಂಬಂಧದಲ್ಲಿ ಶುಲ್ಕವು ಸರ್ಕಾರ ಮತ್ತು ವಿಶ್ವವಿದ್ಯಾಲಯವು ಸಮ್ಮತಾಭಿಪ್ರಾಯದ ಒಪ್ಪಂದದ ಪ್ರಕಾರ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) ಅಧಿನಿಯಮ, 2006ರ (2006ರ ಕರ್ನಾಟಕ ಅಧಿನಿಯಮ 8) ಅನುಸಾರವಾಗಿ ಸರ್ಕಾರಿ ಸೀಟುಗಳಿಗಾಗಿ ರಾಜ್ಯ ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸಿದಂತೆ ಇರತಕ್ಕದ್ದು.

(2) ವಿಶ್ವವಿದ್ಯಾಲಯದ ಇತರ ಸೀಟುಗಳಿಗೆ ಸಂಬಂಧಿಸಿದಂತೆ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳು (ಪ್ರವೇಶ, ನಿಯಂತ್ರಣ ಮತ್ತು ಶುಲ್ಕ ನಿಗದಿ) ಅಧಿನಿಯಮ, 2006ರ (2006ರ ಕರ್ನಾಟಕ ಅಧಿನಿಯಮ 8) 6ನೇ ಪ್ರಕರಣದ ಉಪಬಂಧಗಳ ಅನುಸಾರವಾಗಿ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರ ಅಧ್ಯಕ್ಷತೆಯ ಅಡಿಯಲ್ಲಿ ರಚಿಸಲಾದ ಶುಲ್ಕ ನಿಯಂತ್ರಣ ಸಮಿತಿಯ ಮೂಲಕ ಶುಲ್ಕವನ್ನು ನಿಗದಿಪಡಿಸತಕ್ಕದ್ದು. ಈ ಪ್ರಕರಣದ ಉದ್ದೇಶಕ್ಕಾಗಿ ವಿಶ್ವವಿದ್ಯಾಲಯವನ್ನು ಖಾಸಗಿ ಅನುದಾನರಹಿತ ವೃತ್ತಿಪರ ಶಿಕ್ಷಣ ಸಂಸ್ಥೆ ಎಂದು ಭಾವಿಸತಕ್ಕದ್ದು.

## ಅಧ್ಯಾಯ – VI
## ಸಂಕೀರ್ಣ

**40. ನೌಕರರ ಸೇವಾ ಷರತ್ತುಗಳು.-** (1) ಪರಿನಿಯಮಗಳ ಮತ್ತು ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಥವಾ ನಿಯಮಗಳ ಮೂಲಕ ನಿಯಮಿಸಬಹುದಾದ ಅಂಥ ನಿಬಂಧನೆಗಳು ಮತ್ತು ಷರತ್ತುಗಳು, ಯಾವುದಾದರೂ ಇದ್ದಲ್ಲಿ, ಅವುಗಳಿಗೆ ಒಳಪಟ್ಟು ಪ್ರತಿಯೊಬ್ಬ ನೌಕರನು ಲಿಖಿತ ಕರಾರಿನ ಅಡಿಯಲ್ಲಿ ನೇಮಕಗೊಳ್ಳತಕ್ಕದ್ದು ಮತ್ತು ಅದನ್ನು ವಿಶ್ವವಿದ್ಯಾಲಯದಲ್ಲಿ ಇಟ್ಟುಕೊಳ್ಳತಕ್ಕದ್ದು ಹಾಗೂ ಅದರ ಪ್ರತಿಯನ್ನು ಸಂಬಂಧಪಟ್ಟ ನೌಕರನಿಗೆ ನೀಡತಕ್ಕದ್ದು.

(2) ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದ ಕಾರ್ಯವಿಧಾನಗಳ ಮೂಲಕ ನಿಯಂತ್ರಿಸತಕ್ಕದ್ದು.

(3) ಕರಾರಿನಿಂದಾಗಿ ವಿಶ್ವವಿದ್ಯಾಲಯ ಮತ್ತು ನೌಕರನ ಮಧ್ಯದಲ್ಲಿ ಉದ್ಭವಿಸಬಹುದಾದ ಯಾವುದೇ ವಿವಾದವನ್ನು, ಲಿಖಿತ ಕರಾರಿನಲ್ಲಿ ಉಪಬಂಧಿಸಿದ ವಿಧಾನದಲ್ಲಿ ಹಾಗೂ ಪರಿನಿಯಮಗಳ ಅನುಸಾರವಾಗಿ ಪರಿಹರಿಸತಕ್ಕದ್ದು.

**41. ಮೇಲ್ಮನವಿ ಹಕ್ಕು.-** ವಿಶ್ವವಿದ್ಯಾಲಯವು ತನ್ನ ನೌಕರರ ಅಥವಾ ವಿದ್ಯಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡ ಸಂದರ್ಭದಲ್ಲಿ, ಬಾಧಿತ ನೌಕರ ಅಥವಾ ವಿದ್ಯಾರ್ಥಿಗಳು ಪರಿನಿಯಮಗಳಲ್ಲಿ ನಿರ್ದಿಷ್ಟಪಡಿಸಿದ ಅಂಥ ಪ್ರಾಧಿಕಾರಕ್ಕೆ ಮೇಲ್ಮನವಿ ಸಲ್ಲಿಸುವ ಹಕ್ಕನ್ನು ಹೊಂದಿರತಕ್ಕದ್ದು.

**42. ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿ.-** ವಿಶ್ವವಿದ್ಯಾಲಯವು, ತನ್ನ ನೌಕರರ ಪ್ರಯೋಜನಕ್ಕಾಗಿ, ಪರಿನಿಯಮಗಳು ಮತ್ತು ಜಾರಿಯಲ್ಲಿರುವ ಕಾನೂನುಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ಅಂಥ ವಿಧಾನದಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು ತಾನು

ಸೂಕ್ತವೆಂದು ಭಾವಿಸಬಹುದಾದ ಅಂಥ ಭವಿಷ್ಯ ಅಥವಾ ನಿವೃತ್ತಿ ವೇತನ ನಿಧಿಯನ್ನು ರಚಿಸತಕ್ಕದ್ದು ಹಾಗೂ ಅಂಥ ವಿಮಾ ಯೋಜನೆಗಳನ್ನು ಒದಗಿಸತಕ್ಕದ್ದು.

**43. ವಿಶ್ವವಿದ್ಯಾಲಯದ ಪ್ರಾಧಿಕಾರಗಳು ಮತ್ತು ಸಂಸ್ಥೆಗಳ ರಚನೆಯ ವಿವಾದಗಳು.-** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಇತರ ಸಂಸ್ಥೆಯ ಸದಸ್ಯನಾಗಿ ಯಾವೊಬ್ಬ ವ್ಯಕ್ತಿಯು ಸೂಕ್ತವಾಗಿ ಆಯ್ಕೆಯಾಗಿದ್ದಾನೆಯೇ ಅಥವಾ ನೇಮಕಗೊಂಡಿದ್ದಾನೆಯೇ ಅಥವಾ ಅದಕ್ಕೆ ಅರ್ಹನಾಗಿದ್ದಾನೆಯೇ ಎಂಬ ಯಾವುದೇ ಪ್ರಶ್ನೆ ಉದ್ಭವಿಸಿದರೆ, ಆ ವಿಷಯವನ್ನು ತೀರ್ಮಾನಕ್ಕಾಗಿ ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು ಮತ್ತು ಅವರ ತೀರ್ಮಾನವು ಅಂತಿಮವಾಗಿರತಕ್ಕದ್ದು.

**44. ಸಮಿತಿಗಳ ರಚನೆ.-** 23ನೇ ಪ್ರಕರಣದಲ್ಲಿ ನಮೂದಿಸಿದ ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರವು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಅಧಿಕಾರವನ್ನು ಹೊಂದಿರುವ ಅಂಥ ಸದಸ್ಯರನ್ನು ಒಳಗೊಂಡ ಅಂಥ ಪ್ರಾಧಿಕಾರದ ಒಂದು ಸಮಿತಿಯನ್ನು ರಚಿಸಲು ಅಧಿಕಾರವನ್ನು ಹೊಂದಿರತಕ್ಕದ್ದು.

**45. ಆಕಸ್ಮಿಕವಾಗಿ ಖಾಲಿಯಾದ ಸ್ಥಾನಗಳನ್ನು ತುಂಬುವುದು.-** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಂಸ್ಥೆಯ ಪದನಿಮಿತ್ತ ಸದಸ್ಯರನ್ನು ಹೊರತುಪಡಿಸಿ, ಸದಸ್ಯರ ಪೈಕಿ ಯಾವುದೇ ಸ್ಥಾನವು ಆಕಸ್ಮಿಕವಾಗಿ ಖಾಲಿಯಾದರೆ, ಯಾರ ಸ್ಥಾನವು ಖಾಲಿಯಾಗಿ ತುಂಬಬೇಕಾಗಿ ಬಂದಿದೆಯೋ ಆ ಸದಸ್ಯನನ್ನು ಯಾವ ರೀತಿಯಲ್ಲಿ ಆರಿಸಲಾಗಿತ್ತೋ ಅದೇ ರೀತಿಯಲ್ಲಿ ಹೊಸ ಸದಸ್ಯನನ್ನು ಆರಿಸಿ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ಖಾಲಿ ಸ್ಥಾನವನ್ನು ಭರ್ತಿ ಮಾಡಿದ ವ್ಯಕ್ತಿಯು ಆತನು ಯಾವ ಸದಸ್ಯನ ಸ್ಥಾನದಲ್ಲಿ ಭರ್ತಿಯಾಗಿರುವನೋ ಆ ಸದಸ್ಯನು ಪ್ರಾಧಿಕಾರ ಅಥವಾ ಸಂಸ್ಥೆಯ ಸದಸ್ಯನಾಗಿ ಉಳಿಯುತ್ತಿದ್ದ ಬಾಕಿ ಅವಧಿಯವರೆಗೆ ಮಾತ್ರ ಸದಸ್ಯನಾಗಿರತಕ್ಕದ್ದು.

**46. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.-** ಈ ಅಧಿನಿಯಮ ಅಥವಾ ಪರಿನಿಯಮಗಳು ಅಥವಾ ನಿಯಮಗಳಿಗೆ ಅನುಸಾರವಾಗಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ವಿಶ್ವವಿದ್ಯಾಲಯದ ಯಾವೊಬ್ಬ ಅಧಿಕಾರಿ ಅಥವಾ ಇತರ ನೌಕರರ ವಿರುದ್ಧ ಯಾವುದೇ ದಾವೆ ಅಥವಾ ಇತರ ಕಾನೂನು ವ್ಯವಹರಣೆಗಳನ್ನು ನಡೆಸಲು ಅವಕಾಶ ಇರತಕ್ಕದ್ದಲ್ಲ.

**47. ತಾತ್ಕಾಲಿಕ ಉಪಬಂಧಗಳು.-** ಈ ಅಧಿನಿಯಮ ಮತ್ತು ಪರಿನಿಯಮಗಳ ಯಾವುದೇ ಇತರ ಉಪಬಂಧಗಳಲ್ಲಿ ಏನೇ ಇದ್ದರೂ,-

(i) ಮೊದಲ ಕುಲಪತಿ ಮತ್ತು ಸಹಕುಲಪತಿ, ಯಾರಾದರೂ ಇದ್ದರೆ, ಅವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು;

(ii) ಮೊದಲ ಕುಲಸಚಿವರನ್ನು ಮತ್ತು ಮೊದಲ ಹಣಕಾಸು ಅಧಿಕಾರಿಯವರನ್ನು ಕುಲಾಧಿಪತಿಯವರು ನೇಮಕಮಾಡತಕ್ಕದ್ದು; ಮತ್ತು

(iii) ಮೊದಲ ವ್ಯವಸ್ಥಾಪನ ಮಂಡಳಿ, ಮೊದಲ ಹಣಕಾಸು ಸಮಿತಿ, ಮೊದಲ ಸಂಶೋಧನೆ ಮತ್ತು ಅನ್ವೇಷಣಾ ಪರಿಷತ್ತು ಹಾಗೂ ಮೊದಲ ಶೈಕ್ಷಣಿಕ ಪರಿಷತ್ತನ್ನು ಕುಲಾಧಿಪತಿಯವರು ರಚಿಸತಕ್ಕದ್ದು.

**48. ಶಾಶ್ವತ ಶಾಸನಬದ್ಧ ದತ್ತಿ ನಿಧಿ.-** (1) ವಿಶ್ವವಿದ್ಯಾಲಯವು, ಕನಿಷ್ಠ ಇಪ್ಪತ್ತೈದು ಕೋಟಿ ರೂಪಾಯಿಗಳನ್ನುಳ್ಳ ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸತಕ್ಕದ್ದು ಇದರ ಪೈಕಿ ಕನಿಷ್ಠ ಹದಿನೈದು ಕೋಟಿ ರೂಪಾಯಿಗಳು ನಗದು ರೂಪದಲ್ಲಿ ಮತ್ತು ಇನ್ನುಳಿದದ್ದು ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ಇರತಕ್ಕದ್ದು ಮತ್ತು ಇದನ್ನು ತಾನಾಗಿಯೆ ಹೆಚ್ಚಿಸಬಹುದಾಗಿದ್ದು ಆದರೆ ಕಡಿಮೆ ಮಾಡತಕ್ಕದ್ದಲ್ಲ:

ಪರಂತು, ಬೆಂಗಳೂರು ಅಥವಾ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊರಗಿರುವ ವಿಶ್ವವಿದ್ಯಾಲಯದ ಸಂದರ್ಭದಲ್ಲಿ ಕನಿಷ್ಠ ಹತ್ತು ಕೋಟಿ ರೂಪಾಯಿಗಳು ನಗದು

ರೂಪದಲ್ಲಿರತಕ್ಕದ್ದು ಮತ್ತು ಉಳಿದ ಐದು ಕೋಟಿ ರೂಪಾಯಿಗಳು ಬ್ಯಾಂಕ್ ಗ್ಯಾರಂಟಿಯ ರೂಪದಲ್ಲಿರತಕ್ಕದ್ದು.

(2) ವಿಶ್ವವಿದ್ಯಾಲಯವು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಶಾಶ್ವತ ಶಾಸನಬದ್ಧ ದತ್ತಿ ನಿಧಿಯ ಹಣವನ್ನು ಹೂಡಲು ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯವು ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಗೆ ವರ್ಗಾವಣೆ ಮಾಡಬಹುದು. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನೂ ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(4) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಿದ ವರಮಾನದ ಶೇಕಡಾ ಎಪ್ಪತ್ತೈದರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸಗಳ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತೈದರಷ್ಟನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿಯಲ್ಲಿ ಪುನ: ತೊಡಗಿಸತಕ್ಕದ್ದು.

**49. ವಿಶ್ವವಿದ್ಯಾಲಯದ ದತ್ತಿ ನಿಧಿ.-** (1) ಪ್ರಾಯೋಜಕ ಸಂಸ್ಥೆಯು ನಿರ್ಧರಿಸಬಹುದಾದಂತೆ ನಿಧಿಗಳನ್ನು ಒಳಗೊಂಡ ವಿಶ್ವವಿದ್ಯಾಲಯದ ದತ್ತಿ ನಿಧಿಯನ್ನು ವಿಶ್ವವಿದ್ಯಾಲಯವು ಸ್ಥಾಪಿಸತಕ್ಕದ್ದು. ಇದು ಕಾಲಕಾಲಕ್ಕೆ ಸ್ವೀಕರಿಸಬಹುದಾದ ದೇಣಿಗೆಗಳು ಮತ್ತು ಇತರ ನಿಧಿಗಳನ್ನು ಒಳಗೊಂಡಿರತಕ್ಕದ್ದು.

(2) ವಿಶ್ವವಿದ್ಯಾಲಯವು, ಪರಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ವಿಶ್ವವಿದ್ಯಾಲಯದ ದತ್ತಿನಿಧಿಯನ್ನು ಹೂಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(3) ವಿಶ್ವವಿದ್ಯಾಲಯ ದತ್ತಿ ನಿಧಿಯು, ವಿಶ್ವವಿದ್ಯಾಲಯವು ತನ್ನ ಸಾಮಾಜಿಕ ಧ್ಯೇಯೋದ್ದೇಶಗಳನ್ನು ನೆರವೇರಿಸುವ ಸಂದರ್ಭದಲ್ಲಿ ಮತ್ತು/ಅಥವಾ ಮುಂಗಾಣದ ಸನ್ನಿವೇಶದಲ್ಲಿ ಉದ್ಭವಿಸಬಹುದಾದ ಹಣಕಾಸು ಸವಾಲುಗಳಿಂದ ತನ್ನನ್ನು ರಕ್ಷಿಸಿಕೊಳ್ಳುವುದಕ್ಕಾಗಿ, ಸ್ವಇಚ್ಛೆಯಿಂದ ನಿರ್ವಹಿಸಿಕೊಂಡು ಬರಲು ಮತ್ತು ಜವಾಬ್ದಾರಿಯಿಂದ ಹಣ ಹೂಡಿಕೆ ಮಾಡಲು ಇಚ್ಛೆಯುಳ್ಳವರಾಗಿ ಸ್ವಯಂ ವಿಧಿಸಿಕೊಂಡ ನಿಧಿಯಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವು, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ಯಾವುದೇ ಮೊಬಲಗನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಗೆ ವರ್ಗಾಯಿಸಬಹುದು. ವಿಶ್ವವಿದ್ಯಾಲಯದ ಸಮಾಪಣೆಗೊಳಿಸುವ ಸಂದರ್ಭವನ್ನು ಹೊರತುಪಡಿಸಿ, ಇತರ ಯಾವ ಸಂದರ್ಭಗಳಲ್ಲೂ ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಯಾವುದೇ ಮೊಬಲಗನ್ನು ಇತರ ಉದ್ದೇಶಗಳಿಗಾಗಿ ವರ್ಗಾಯಿಸತಕ್ಕದ್ದಲ್ಲ.

(5) ವಿಶ್ವವಿದ್ಯಾಲಯದ ದತ್ತಿ ನಿಧಿಯಿಂದ ಬರುವ ವರಮಾನದ ಶೇಕಡಾ ಎಂಭತ್ತರಷ್ಟನ್ನು ವಿಶ್ವವಿದ್ಯಾಲಯದ ಅಭಿವೃದ್ಧಿ ಅಥವಾ ಸಾಮಾನ್ಯ ಕೆಲಸದ ಉದ್ದೇಶಗಳಿಗಾಗಿ ಬಳಸಿಕೊಳ್ಳತಕ್ಕದ್ದು. ಉಳಿದ ಶೇಕಡಾ ಇಪ್ಪತ್ತರಷ್ಟನ್ನು ವಿಶ್ವವಿದ್ಯಾಲಯದ ದತ್ತಿ ನಿಧಿಯಲ್ಲಿ ಪುನಃ ತೊಡಗಿಸತಕ್ಕದ್ದು.

**50. ಸಾಮಾನ್ಯ ನಿಧಿ.-** (1) ವಿಶ್ವವಿದ್ಯಾಲಯವು, ಒಂದು ಸಾಮಾನ್ಯ ನಿಧಿಯನ್ನು ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:-

(i) ವಿಶ್ವವಿದ್ಯಾಲಯವು ವಿಧಿಸಬಹುದಾದ ಎಲ್ಲಾ ಶುಲ್ಕಗಳು;

(ii) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವುದೇ ಇತರ ಮೂಲದಿಂದ ಸ್ವೀಕರಿಸಲಾದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ದೇಣಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು ಅಥವಾ ವಂತಿಗೆಗಳು;

(2) ಸಾಮಾನ್ಯ ನಿಧಿಗೆ ಜಮಾ ಮಾಡುವ ನಿಧಿಗಳನ್ನು ವಿಶ್ವವಿದ್ಯಾಲಯದ ಎಲ್ಲಾ ಆವರ್ತಕ ವೆಚ್ಚಗಳನ್ನು ಭರಿಸಲು ಉಪಯೋಗಿಸಿಕೊಳ್ಳತಕ್ಕದ್ದು.

**51. ಅಭಿವೃದ್ಧಿ ನಿಧಿ.-** (1) ವಿಶ್ವವಿದ್ಯಾಲಯವು, ಒಂದು ಅಭಿವೃದ್ಧಿ ನಿಧಿಯನ್ನು ಸಹ ಸ್ಥಾಪಿಸತಕ್ಕದ್ದು. ಇದರಲ್ಲಿ ಈ ಮುಂದಿನ ಮೊಬಲಗುಗಳನ್ನು ಜಮಾ ಮಾಡತಕ್ಕದ್ದು, ಎಂದರೆ:-

(i) ವಿದ್ಯಾರ್ಥಿಗಳಿಂದ ವಿಧಿಸಬಹುದಾದ ಅಭಿವೃದ್ಧಿ ಶುಲ್ಕಗಳು;

(ii) ವಿಶ್ವವಿದ್ಯಾಲಯದ ಅಭಿವೃದ್ಧಿಯ ಉದ್ದೇಶಗಳಿಗಾಗಿ ಯಾವುದೇ ಇತರ ಮೂಲಗಳಿಂದ ಸ್ವೀಕರಿಸಿದ ಎಲ್ಲಾ ಮೊತ್ತ;

(iii) ವಿಶ್ವವಿದ್ಯಾಲಯಕ್ಕೆ ಮಾಡಿದ ಎಲ್ಲಾ ವಂತಿಗೆಗಳು;

(iv) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೂಲಕ ನಿಷೇಧಿಸದೇ ಇರುವ ಯಾವೊಬ್ಬ ಇತರ ವ್ಯಕ್ತಿ ಅಥವಾ ಸಂಸ್ಥೆಯು ಈ ಸಂಬಂಧದಲ್ಲಿ ಕೊಟ್ಟ ಎಲ್ಲಾ ದೇಣಿಗೆಗಳು ಅಥವಾ ವಂತಿಗೆಗಳು; ಮತ್ತು

(v) ಶಾಶ್ವತ ಶಾಸನಬದ್ಧ ದತ್ತಿ ನಿಧಿಯಿಂದ ಸ್ವೀಕರಿಸಲಾದ ಎಲ್ಲಾ ವರಮಾನಗಳು.

(2) ಅಭಿವೃದ್ಧಿ ನಿಧಿಗೆ ಕಾಲಕಾಲಕ್ಕೆ ಜಮಾ ಮಾಡಿದ ನಿಧಿಯನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಉಪಯೋಗಿಸಿಕೊಳ್ಳತಕ್ಕದ್ದು.

**52. ನಿಧಿಗಳ ನಿರ್ವಹಣೆ.-** 48, 49, 50 ಮತ್ತು 51ನೇ ಪ್ರಕರಣಗಳಡಿಯಲ್ಲಿ ಸ್ಥಾಪಿಸಲಾದ ನಿಧಿಗಳನ್ನು ಪ್ರಬಂಧಕ ಮಂಡಳಿಯ ಸಾಮಾನ್ಯ ಮೇಲ್ವಿಚಾರಣೆ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಿಯಮಿಸಬಹುದಾದ ಅಂಥ ವಿಧಾನದಲ್ಲಿ ನಿಯಂತ್ರಿಸತಕ್ಕದ್ದು ಹಾಗೂ ನಿರ್ವಹಿಸತಕ್ಕದ್ದು.

**53. ವಾರ್ಷಿಕ ವರದಿ.-** (1) ವಿಶ್ವವಿದ್ಯಾಲಯದ ವಾರ್ಷಿಕ ವರದಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ಸಿದ್ಧಪಡಿಸತಕ್ಕದ್ದು ಮತ್ತು ಅದರ ಅನುಮೋದನೆಗಾಗಿ ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(2) ಪ್ರಬಂಧಕ ಮಂಡಳಿಯು ವಾರ್ಷಿಕ ವರದಿಯನ್ನು ತನ್ನ ಸಭೆಯಲ್ಲಿ ಪರಿಗಣಿಸತಕ್ಕದ್ದು ಹಾಗೂ ಅದನ್ನು ಮಾರ್ಪಾಡುಗಳೊಡನೆ ಅಥವಾ ಮಾರ್ಪಾಡುಗಳಿಲ್ಲದೆ ಅನುಮೋದಿಸಬಹುದು.

(3) ಪ್ರಬಂಧಕ ಮಂಡಳಿಯು ಸೂಕ್ತವಾಗಿ ಅನುಮೋದಿಸಿದ ವಾರ್ಷಿಕ ವರದಿಯ ಒಂದು ಪ್ರತಿಯನ್ನು ಪ್ರತಿವರ್ಷದ ಮಾರ್ಚ್ ತಿಂಗಳಿನಲ್ಲಿ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ಡಿಸೆಂಬರ್ 31ಕ್ಕೆ ಮೊದಲು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**54. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.-** (1) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕ ಪತ್ರ ಮತ್ತು ಜಮಾ ಖರ್ಚು ಪಟ್ಟಿಯನ್ನು ವ್ಯವಸ್ಥಾಪನಾ ಮಂಡಳಿಯ ನಿರ್ದೇಶನದಲ್ಲಿ ಸಿದ್ಧಪಡಿಸತಕ್ಕದ್ದು ಮತ್ತು ವಿಶ್ವವಿದ್ಯಾಲಯಕ್ಕೆ ಎಲ್ಲಾ ಮೂಲಗಳಿಂದ ಪ್ರಾಪ್ತವಾಗುವ ಅಥವಾ ಸ್ವೀಕರಿಸಲಾಗುವ ಎಲ್ಲಾ ನಿಧಿಗಳು ಹಾಗೂ ವಿತರಿಸಿದ ಅಥವಾ ಸಂದಾಯ ಮಾಡಿದ ಎಲ್ಲಾ ಮೊಬಲಗುಗಳನ್ನು ವಿಶ್ವವಿದ್ಯಾಲಯವು ನಿರ್ವಹಿಸುವ ಲೆಕ್ಕಪತ್ರದಲ್ಲಿ ನಮೂದಿಸತಕ್ಕದ್ದು.

(2) ವಿಶ್ವವಿದ್ಯಾಲಯದ ವಾರ್ಷಿಕ ಲೆಕ್ಕಪತ್ರಗಳನ್ನು ಪ್ರತಿ ವರ್ಷವೂ ಭಾರತದ ಚಾರ್ಟೆಡ್ ಅಕೌಂಟೆಂಟ್‌ಗಳ ಸಂಸ್ಥೆಯ ಸದಸ್ಯರಾಗಿರುವ ಒಬ್ಬ ಲೆಕ್ಕಪರಿಶೋಧಕರಿಂದ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(3) ವಾರ್ಷಿಕ ಲೆಕ್ಕಪತ್ರಗಳು ಮತ್ತು ಜಮಾ ಖರ್ಚು ಪಟ್ಟಿಯನ್ನು ಲೆಕ್ಕಪರಿಶೋಧನಾ ವರದಿಯೊಡನೆ, ಪ್ರತಿ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದ ತರುವಾಯ ಬರುವ ನವೆಂಬರ್ 30ಕ್ಕೆ ಮೊದಲು ಪ್ರಬಂಧಕ ಮಂಡಳಿಗೆ ಸಲ್ಲಿಸತಕ್ಕದ್ದು.

(4) ವಾರ್ಷಿಕ ಲೆಕ್ಕಪತ್ರಗಳು, ಜಮಾಖರ್ಚು ಪಟ್ಟಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಪ್ರಬಂಧಕ ಮಂಡಳಿಯು ತನ್ನ ಸಭೆಯಲ್ಲಿ ಪರ್ಯಾಲೋಚಿಸತಕ್ಕದ್ದು ಮತ್ತು ಪ್ರಬಂಧಕ ಮಂಡಳಿಯು ಅದನ್ನು ತನ್ನ ಅಭಿಪ್ರಾಯಗಳೊಡನೆ ಸಂದರ್ಶಕರಿಗೆ ಹಾಗೂ ಸರ್ಕಾರಕ್ಕೆ ಪ್ರತಿ ವರ್ಷದ ಡಿಸೆಂಬರ್ 31ಕ್ಕೆ ಮೊದಲು ಕಳುಹಿಸತಕ್ಕದ್ದು.

(5) ಲೆಕ್ಕಪರಿಶೋಧಕರ ವರದಿಯಲ್ಲಿ ಯಾವುದೇ ಮುಖ್ಯ ಬದಲಾವಣೆ ಇದ್ದ ಸಂದರ್ಭದಲ್ಲಿ, ಅವುಗಳನ್ನು ಸರಿಪಡಿಸಲು, ರಾಜ್ಯ ಸರ್ಕಾರವು ವಿಶ್ವವಿದ್ಯಾಲಯಕ್ಕೆ ನಿರ್ದೇಶನಗಳನ್ನು ನೀಡಬಹುದು ಮತ್ತು ಅಂಥ ನಿರ್ದೇಶನಗಳು ವಿಶ್ವವಿದ್ಯಾಲಯದ ಮೇಲೆ ಬಂಧನಕಾರಿಯಾಗಿರತಕ್ಕದ್ದು.

**55. ವಿಶ್ವವಿದ್ಯಾಲಯ ದಾಖಲೆಗಳ ರುಜುವಾತಿನ ಮಾದರಿ.-** ವಿಶ್ವವಿದ್ಯಾಲಯದ ಯಾವುದೇ ಪ್ರಾಧಿಕಾರ ಅಥವಾ ಸಮಿತಿಯ ಯಾವುದೇ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ ಅಥವಾ ಗೊತ್ತುವಳಿಯು ಅಥವಾ ವಿಶ್ವವಿದ್ಯಾಲಯದ ಸ್ವಾಧೀನದಲ್ಲಿರುವ ಇತರ ದಾಖಲೆಗಳು ಅಥವಾ ವಿಶ್ವವಿದ್ಯಾಲಯವು ಯುಕ್ತವಾಗಿ ನಿರ್ವಹಿಸುವ ಯಾವುದೇ ರಿಜಿಸ್ಟರ್‌ನಲ್ಲಿಯ ಯಾವುದೇ ನಮೂದುಗಳ ಪ್ರತಿಯನ್ನು, ಅದರ ಮೇಲೆ ಕುಲಸಚಿವರು ಪ್ರಮಾಣೀಕರಿಸಿದ್ದರೆ, ಅದನ್ನು ಅಂಥ ರಶೀದಿ, ಅರ್ಜಿ, ಸೂಚನೆ, ಆದೇಶ, ವ್ಯವಹರಣೆ, ಗೊತ್ತುವಳಿ ಅಥವಾ ದಾಖಲೆ ಅಥವಾ ರಿಜಿಸ್ಟರ್‌ನಲ್ಲಿ ಇರುವ ನಮೂದನ್ನು ಮೇಲ್ನೋಟದ ಸಾಕ್ಷ್ಯವೆಂಬುದಾಗಿ ಸ್ವೀಕರಿಸತಕ್ಕದ್ದು ಮತ್ತು ವಿಷಯಗಳ ಸಾಕ್ಷಿಯಾಗಿ ಅಂಗೀಕರಿಸತಕ್ಕದ್ದು ಹಾಗೂ ಮೂಲ ದಾಖಲೆಗಳನ್ನೇ ಸಲ್ಲಿಸಿದ್ದರೆ ಅದನ್ನು, ದಾಖಲಿಸಿರುವ ವಿಷಯಗಳು ಮತ್ತು ವಹಿವಾಟುಗಳ ಸಾಕ್ಷ್ಯವಾಗಿ ಅಂಗೀಕರಿಸಲಾಗುತ್ತಿತ್ತೋ, ಅದೇ ರೀತಿಯಲ್ಲಿ ಇವನ್ನೂ ಸಾಕ್ಷ್ಯವಾಗಿ ಅಂಗೀಕರಿಸತಕ್ಕದ್ದು.

**56. ನಿರ್ದೇಶನಗಳನ್ನು ನೀಡಲು ರಾಜ್ಯ ಸರ್ಕಾರದ ಅಧಿಕಾರ.-** ರಾಜ್ಯಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಥವಾ ಅದರಲ್ಲಿ ಇರುವ ಯಾವುವೇ ಉಪಬಂಧಗಳನ್ನು ಅಥವಾ ಅದರಡಿಯಲ್ಲಿ ರಚಿಸಿದ ಯಾವುವೇ ನಿಯಮಗಳು ಅಥವಾ ಆದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿರ್ದೇಶನ ನೀಡುವುದು ಅವಶ್ಯವೆಂದು ಅಥವಾ ಉಚಿತವೆಂದು ಅಭಿಪ್ರಾಯಪಟ್ಟಲ್ಲಿ ಅದು ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ವಿಶ್ವವಿದ್ಯಾಲಯದ ಪ್ರಬಂಧಕ ಮಂಡಳಿ ಅಥವಾ ಸಂದರ್ಭಾನುಸಾರವಾಗಿ ವ್ಯವಸ್ಥಾಪನಾ ಮಂಡಳಿಯು ಅಂಥ ಪ್ರತಿಯೊಂದು ನಿರ್ದೇಶನವನ್ನು ಪಾಲಿಸತಕ್ಕದ್ದು.

**57. ದಂಡಗಳು.-** (1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿತವಾದ ನಿಯಮಗಳು ಉಪಬಂಧಗಳನ್ನು ಅಥವಾ ಯಾವುದೇ ಪರೀಕ್ಷಾ ವಿಷಯಗಳನ್ನು ಅಥವಾ ಪದವಿಗಳನ್ನು ನೀಡುವುದಕ್ಕೆ ಅಥವಾ ಅಂಕಪಟ್ಟಿಗಳನ್ನು ನೀಡುವುದಕ್ಕೆ ಸಂಬಂಧಪಟ್ಟ ವಿಷಯಗಳಲ್ಲಿ ಉಲ್ಲಂಘನೆಗಳನ್ನು ಮಾಡುವ ಯಾವೊಬ್ಬ ವ್ಯಕ್ತಿಯು, ಅಪರಾಧ ನಿರ್ಣಯವಾದ ಮೇಲೆ, ಐವತ್ತು ಸಾವಿರ ರೂಪಾಯಿಗಳಿಗೆ ಕಡಿಮೆಯಲ್ಲದ ಆದರೆ ಹತ್ತು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಆರು ತಿಂಗಳ ಅವಧಿಗಿಂತ ಕಡಿಮೆಯಲ್ಲದ ಆದರೆ ಎರಡು ವರ್ಷಗಳ ಅವಧಿಯವರೆಗೆ ವಿಸ್ತರಿಸಬಹುದಾದ ಕಾರಾವಾಸದಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು:

ಪರಂತು, ಅಪರಾಧವನ್ನು ಎಸಗುವಲ್ಲಿ ವಿಶ್ವವಿದ್ಯಾಲಯವೂ ಸಹ ಒಳಗೊಂಡಿರುವಲ್ಲಿ, ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಈ ಅಧಿನಿಯಮದ ಅಡಿಯಲ್ಲಿ ಮಂಜೂರು ಮಾಡಲಾದ ಅನುಮತಿ ಪತ್ರವನ್ನು ಹಿಂತೆಗೆದುಕೊಳ್ಳತಕ್ಕದ್ದು.

(2) ಈ ಪ್ರಕರಣದ ಅಡಿಯಲ್ಲಿಯ ದಂಡವನ್ನು ಇತರ ಯಾವುದೇ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಲಾದ ದಂಡಕ್ಕೆ ಬಾಧಕವಾಗದಂತೆ ವಿಧಿಸಬಹುದು.

**58. ಪ್ರವೇಶಿಸುವ ಮತ್ತು ಪರಿಶೋಧಿಸುವ ಅಧಿಕಾರ.-** ಈ ಉದ್ದೇಶಕ್ಕಾಗಿ, ರಾಜ್ಯಸರ್ಕಾರದಿಂದ ಪ್ರಾಧಿಕೃತಗೊಂಡ 'ಎ' ಸಮೂಹದ ಅಧಿಕಾರಿ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಯಾವೊಬ್ಬ ಅಧಿಕಾರಿಯು, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕ್ಯಾಪಿಟೇಶನ್ ಶುಲ್ಕ ನಿಷೇಧ) ಅಧಿನಿಯಮ, 1984ರ (1984ರ ಕರ್ನಾಟಕ ಅಧಿನಿಯಮ 37) ಅಡಿಯಲ್ಲಿ ನಿರ್ದಿಷ್ಟಪಡಿಸಿರಬಹುದಾದ ಅಂಥ ಷರತ್ತುಗಳಿಗೆ ಒಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ, ಆ ಅಧಿನಿಯಮದ 9ನೇ ಪ್ರಕರಣದ ಅಡಿಯಲ್ಲಿ ಉಪಬಂಧಿಸಲಾದಂತಹವೇ ಅಧಿಕಾರಗಳನ್ನು ಚಲಾಯಿಸಲು ಮತ್ತು ಪ್ರಕಾರ್ಯಗಳನ್ನು ನೆರವೇರಿಸಲು ಅಧಿಕೃತನಾದ ಅಧಿಕಾರಿ ಎಂಬುದಾಗಿ ಭಾವಿಸತಕ್ಕದ್ದು.

**59. ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ನಿರ್ದೇಶನವನ್ನು ನೀಡುವ ಅಧಿಕಾರ.-** (1) ವಿಶ್ವವಿದ್ಯಾಲಯವು ತನ್ನ ರಚನೆ ಅಥವಾ ನಿಗಮನವನ್ನು ನಿಯಂತ್ರಿಸುವ ಕಾನೂನಿಗೆ ಅನುಸಾರವಾಗಿ ತನ್ನ ಸಮಾಪನವನ್ನು ಉದ್ದೇಶಿಸಿದ್ದಲ್ಲಿ, ಅದು ಕನಿಷ್ಠ ಆರು ತಿಂಗಳ ಲಿಖಿತ ಪೂರ್ವ ಸೂಚನೆಯನ್ನು (ನೋಟಿಸು) ಸರ್ಕಾರಕ್ಕೆ ನೀಡತಕ್ಕದ್ದು.

(2) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಈ ಕೆಳಗಿನವುಗಳ ಬಗ್ಗೆ, ಎಂದರೆ:-

(i) ಪದವಿಯನ್ನು ನೀಡುವುದಕ್ಕಾಗಿ ಬೋಧನೆಯ ಗುಣಮಟ್ಟ;

(ii) ಶಿಕ್ಷಣದ ಗುಣಮಟ್ಟ;

(iii) ಉನ್ನತ ಶಿಕ್ಷಣದ ವ್ಯಾಪಾರೀಕರಣವನ್ನು ತಡೆಗಟ್ಟುವುದು;

(iv) ಅಧಿನಿಯಮದ ಉಪಬಂಧಗಳ ಉಲ್ಲಂಘನೆಯ ಬಗ್ಗೆ, ಯಾವುದಾದರೂ ಇದ್ದಲ್ಲಿ,

- ಇವುಗಳ ಬಗ್ಗೆ ವಿಶ್ವವಿದ್ಯಾಲಯದ ನಿಯತಕಾಲಿಕ ಪರಿವೀಕ್ಷಣೆಯನ್ನು ನಡೆಸತಕ್ಕದ್ದು ಮತ್ತು ಸರ್ಕಾರಕ್ಕೆ ವರದಿಯನ್ನು ಕಳುಹಿಸತಕ್ಕದ್ದು.

(3) ದುರ್ವ್ಯವಹರಣೆ, ದುರಾಡಳಿತ ಮತ್ತು ಅಶಿಸ್ತು ಆಗಿದೆ ಎಂಬುದನ್ನು ಗುರುತಿಸಿದರೆ, ಸರ್ಕಾರವು, ವಿಶ್ವವಿದ್ಯಾಲಯದ ಆಡಳಿತವರ್ಗದವರಿಗೆ ಆಡಳಿತವನ್ನು ಸರಿಪಡಿಸಬೇಕೆಂದು ನಿರ್ದೇಶನಗಳನ್ನು ನೀಡತಕ್ಕದ್ದು. ನಿಯಮಿಸಬಹುದಾದ ಅಂಥ ಅವಧಿಯೊಳಗೆ ಆ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುವ ಹಕ್ಕು ಸರ್ಕಾರದಲ್ಲಿ ನಿಹಿತವಾಗಿರತಕ್ಕದ್ದು.

(4) ವಿಶ್ವವಿದ್ಯಾಲಯವನ್ನು ಅಥವಾ ಅದರ ಯಾವುದೇ ವ್ಯಾಸಂಗ ಕ್ರಮವನ್ನು (ಕೋರ್ಸ್) ಸಮಾಪನಗೊಳಿಸುವ ವಿಧಾನವು, ಸರ್ಕಾರವು ಈ ಸಂಬಂಧದಲ್ಲಿ ನಿಯಮಿಸಬಹುದಾದಂತೆ ಇರತಕ್ಕದ್ದು:

ಪರಂತು, ವಿಶ್ವವಿದ್ಯಾಲಯವು ತನ್ನ ಕಾರಣಗಳನ್ನು ಹೇಳಿಕೊಳ್ಳಲು ಸಮಂಜಸ ಅವಕಾಶಗಳನ್ನು ನೀಡಿದ ಹೊರತು ಅಂಥ ಯಾವುದೇ ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

(5) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೋಟಿಸನ್ನು ಸ್ವೀಕರಿಸಿದ ಮೇಲೆ, ಸರ್ಕಾರವು ಸಂಬಂಧಿಸಿದ ನಿಯಂತ್ರಣಾ ಪ್ರಾಧಿಕಾರದೊಡನೆ ಸಮಾಲೋಚಿಸಿ, ವಿಶ್ವವಿದ್ಯಾಲಯವನ್ನು ಸಮಾಪನಗೊಳಿಸಲು ಅಥವಾ ವ್ಯಾಸಂಗ ಕ್ರಮವನ್ನು ಪರಿಸಮಾಪನಗೊಳಿಸಲು ಉದ್ದೇಶಿಸಿದ ದಿನಾಂಕದಿಂದ, ವಿಶ್ವವಿದ್ಯಾಲಯದಲ್ಲಿ ನಿಯತ ವ್ಯಾಸಂಗ ಕ್ರಮಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕೊನೆಯ ತಂಡ (ಬ್ಯಾಚ್) ತನ್ನ ವ್ಯಾಸಂಗ ಕ್ರಮವನ್ನು ಮುಗಿಸುವವರೆಗೆ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ವಿಶ್ವವಿದ್ಯಾಲಯದ ಆಡಳಿತಕ್ಕೆ ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು.

**60. ಸಮಾಪನೆಯ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವೆಚ್ಚಗಳು.-** (1) 59ನೇ ಪ್ರಕರಣದ (5)ನೇ ಉಪಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ಅದರ ಆಡಳಿತಾತ್ಮಕ ವೆಚ್ಚಗಳನ್ನು ಶಾಶ್ವತ ಶಾಸನಬದ್ಧ ದತ್ತಿ ನಿಧಿ, ಸಾಮಾನ್ಯ ನಿಧಿ ಅಥವಾ ಅಭಿವೃದ್ಧಿ ನಿಧಿಯಿಂದ ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಭರಿಸತಕ್ಕದ್ದು.

(2) ವಿಶ್ವವಿದ್ಯಾಲಯದ ಆಡಳಿತವನ್ನು ಹಸ್ತಾಂತರಗೊಳಿಸುವ ಅವಧಿಯಲ್ಲಿ ವಿಶ್ವವಿದ್ಯಾಲಯದ ವೆಚ್ಚವನ್ನು ಭರಿಸಲು 48, 49, 50 ಮತ್ತು 51ನೇ ಪ್ರಕರಣಗಳ ಅಡಿಯಲ್ಲಿ ಉಲ್ಲೇಖಿಸಲಾದ ನಿಧಿಯು ಸಾಕಷ್ಟು ಇಲ್ಲದಿದ್ದಲ್ಲಿ, ಅಂಥ ವೆಚ್ಚವನ್ನು ಸರ್ಕಾರವು, ವಿಶ್ವವಿದ್ಯಾಲಯದ ಸ್ವತ್ತುಗಳು ಮತ್ತು ಆಸ್ತಿಗಳನ್ನು ವಿಲೇ ಮಾಡುವ ಮೂಲಕ ಭರಿಸತಕ್ಕದ್ದು.

(3) ವಿಶ್ವವಿದ್ಯಾಲಯದ ಸಮಾಪನೆಯು ದುರ್ವ್ಯವಹರಣೆ ಅಥವಾ ದುರಾಡಳಿತದ ಕಾರಣಗಳಿಗಾಗಿ ಆಗಿದ್ದರೆ, ಸರ್ಕಾರವು ಅಂಥ ದುರ್ವ್ಯವಹಾರಕ್ಕೆ ಅಥವಾ ದುರಾಡಳಿತಕ್ಕೆ ಹೊಣೆಯಾಗಿರುವ ವ್ಯಕ್ತಿಗಳನ್ನು ಗುರುತಿಸುವ ಮತ್ತು ಅವರ ಮೇಲೆ ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ದಂಡನೆಯನ್ನು ವಿಧಿಸಲು ಸ್ವತಂತ್ರವಾಗಿರತಕ್ಕದ್ದು.

**61. ತೊಂದರೆಗಳ ನಿವಾರಣೆಗೆ ಅಧಿಕಾರ.-** (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವ ಸಂಬಂಧದಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಅಧಿಸೂಚನೆಯ ಅಥವಾ ಆದೇಶದ ಮೂಲಕ ತೊಂದರೆಯ ನಿವಾರಣೆಗಾಗಿ ಅವಶ್ಯಕ ಹಾಗೂ ಸಮಂಜಸವೆಂದು ತನಗೆ ಕಂಡುಬರುವಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಐದು ವರ್ಷಗಳು ಮುಕ್ತಾಯವಾದ ತರುವಾಯ ಈ ಪ್ರಕರಣದ ಅಡಿಯಲ್ಲಿ ಅಂಥ ಯಾವುದೇ ಅಧಿಸೂಚನೆ ಅಥವಾ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

**62. ರಾಜ್ಯ ಸರ್ಕಾರದ ನಿಯಮಗಳ ರಚನಾಧಿಕಾರ.-** (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಉಭಯ ಸದನಗಳು ಒಪ್ಪಿದರೆ ತದನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ದತಿಯು

ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವನ್ನು ಉಂಟುಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಕೆ.ದ್ವಾರಕನಾಥ್ ಬಾಬು)**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ

**DEPARTMENT OF PARLIAMENTARY AFFAIRS AND LEGISLATION SECRETARIAT**

**NOTIFICATION**

**NO. DPAL 04 SHASANA 2021, BENGALURU, DATED: 16.04.2021**

ಭಾರತ ಸಂವಿಧಾನದ ಅನುಚ್ಛೇಧ 348ರ ಖಂಡ (3)ರ ಅಡಿಯಲ್ಲಿ ರಾಜ್ಯಪಾಲರಿಂದ ಅಧಿಕೃತಗೊಳಿಸಿದ ನ್ಯೂ ಹೊರೈಜನ್ ವಿಶ್ವವಿದ್ಯಾಲಯ ಅಧಿನಿಯಮ, 2021 (2021ರ ಕರ್ನಾಟಕ ಅಧಿನಿಯಮ ಸಂಖ್ಯೆ: 23)ರ ಭಾಷಾಂತರವನ್ನು ಅಧಿಕೃತ ಆಂಗ್ಲ ಪಠ್ಯವೆಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ (ಭಾಗ-IV) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ,-

**KARNATAKA ACT NO. 23 OF 2021**

**(First Published in the Karnataka Gazette Extra-ordinary on the 16th day of April 2021)**

## THE NEW HORIZON UNIVERSITY ACT, 2021

**(Received the assent of the Governor on the 15th day of April 2021)**

An Act to establish and incorporate in the State of Karnataka a University of unitary in nature in private sector by the New Horizon Educational and Cultural Trust to promote and undertake the advancement of applied University education in Sciences, all branches of Engineering, Arts, Management, Commerce and for the matters connected therewith or incidental thereto.

Whereas it is expedient to establish and incorporate in the State of Karnataka a University of unitary in nature in private sector by the New Horizon Educational and Cultural Trust to promote and undertake the advancement of applied University Education in Sciences, all branches of Engineering, Arts, Management, Commerce and for the matters connected therewith or incidental thereto for the purposes hereinafter appearing.

Be it enacted by the Karnataka State Legislature in the seventy second year of the Republic of India as follows:-

### CHAPTER-I
### PRELIMINARY

**1. Short title, extent and commencement.**– (1) This Act may be called the New Horizon University Act, 2021.

(2) It extends to the whole of the State of Karnataka.

అనుబంధం - 02

ज्ञान-विज्ञान विमुक्तये

**UNIVERSITY GRANTS COMMISSION**
**NEW DELHI**

## UGC (ESTABLISHMENT OF AND MAINTENANCE OF STANDARDS IN PRIVATE UNIVERSITIES) REGULATIONS, 2003

### Background

(i) Setting up of private universities through State Acts is a recent phenomenon. An effective regulatory mechanism is required for the maintenance of standards of teaching, research, examination and extension services in these private universities.

(ii) An effective mechanism for regulating the functioning of existing State Universities recognized by the University Grants Commission under section 2(f) and 12B of the UGC Act, 1956 is already in place. In almost all the States, the Governor of the State is the ex-officio Chancellor of the universities in that particular State. Besides, all the recognized State Universities under the purview of the UGC are receiving grants from the UGC and are obligated to follow the statutory regulations made under the UGC Act, which *inter-alia* include regulations defining the minimum qualifications that should be possessed by any person to be appointed to the teaching staff of the universities; regulations defining the minimum standards of instruction for the grant of a degree by a university, etc.

(iii) Under Section 3 of the UGC Act deemed to be university status is granted by the Central Government to those educational institutions of repute, which fulfill the prescribed standards and comply with various requirements laid down by the UGC.

(iv) For private universities belonging to a separate category altogether, a suitable regulatory mechanism is essential by way of laying down the conditions specifically for the establishment and operation of such universities for safeguarding the interests of the student community with adequate emphasis on the quality of education and to avoid commercialization of higher education, etc.

(v) Accordingly, in exercise of the powers conferred by clauses (f) & (g) of sub-section (1) of Section 26 of the UGC Act, 1956, the UGC hereby makes the following Regulations, namely:-

**1. Short title, application and commencement**

1.1. These regulations may be called the University Grants Commission (Establishment of and Maintenance of Standards in Private Universities) Regulations, 2003.

1.2. These shall apply to every private university established by or incorporated under a State Act, before or after the commencement of these regulations.

1.3. These shall apply to all the degrees/diplomas/certificates (including those offered in India in collaboration with foreign universities) offered under formal, non-formal or distance education mode by the private university.

1.4. These shall come into force on the date of their publication in the Gazette of India.

1.5. Any private university, which has started functioning before commencement of these Regulations, shall ensure adherence to these Regulations within a period of 3 months from the notification of these Regulations and confirm the compliance to the UGC. Failure to comply with this requirement, shall render any degree/diploma awarded by a private university as unspecified in terms of Section 22(3) of the UGC Act and shall invite penalty under Section 24 of the UGC Act.

**2.Definitions**

2.1. **"private university"** means a university duly established through a State / Central Act by a sponsoring body viz. a Society registered under the Societies Registration Act 1860, or any other corresponding law for the time being in force in a State or a Public Trust or a Company registered under Section 25 of the Companies Act, 1956.

2.2 "**off-campus centre**"* means a centre of the private university established by it outside the main campus (within or outside the State) operated and maintained as its constituent unit, having the university_s compliment of facilities, faculty and staff.

2.3."**off-shore campus**"* means a campus of the private university established by it outside the country, operated and maintained as its constituent unit, having the university_s compliment of facilities, faculty and staff.

2.4"**study centre**"* means a centre established and maintained or recognized by the university for the purpose of advising, counseling or for rendering any other assistance required by the students used in the context of distance education.

2.5."**student**" means a person duly admitted and pursuing a programme of stud

* _" "off-campus centre" "off-shore campus" and "study centre" as defined under these Regulations shall be applicable to the universities as defined under 2(f) of the UGC Act, 1956.

**3. Establishment and recognition of Private Universities**

3.1. Each private university shall be established by a separate State Act and shall conform to the relevant provisions of the UGC Act, 1956, as amended from time to time.

3.2. A private university shall be a unitary university having adequate facilities for teaching, research, examination and extension services.

3.3. A private university established under a State Act shall operate ordinarily within the boundary of the State concerned. However, after the development of main campus, in exceptional circumstances, the university may be permitted to open off-campus centres, off-shore campuses and study centres after five years of its coming into existence, subject to the following conditions:

3.3.1. The off-campus centre(s) and / or the study centre(s) shall be set up with the prior approval of the UGC and that of the State Government(s) where the centre(s) is/are proposed to be opened.

3.3.2. The over-all performance of the off-campus centre(s) and/ or the study centre(s) shall be monitored annually by the UGC or its designated agency. The directions of the UGC for management, academic development and improvement shall be binding.

3.3.3 If the functioning of the said centre(s) remains unsatisfactory, the private university shall be instructed by the UGC to close down the said centre(s), which shall be binding on the university. In such a situation, the interests of the students already enrolled therein shall be protected.

3.3.4 Any off-shore campus(es) in foreign countries shall be opened only after obtaining due permission from the Government of India and also that of the Government of the host country.

3.3.5 In case of off-shore campus(es), the remittance of funds shall be governed by the rules and regulations of the Reserve Bank of India.

3.4 A Private university shall fulfill the minimum criteria in terms of programmes, faculty, infrastructural facilities, financial viability, etc., as laid down from time to time by the UGC and other concerned statutory bodies such as the All India Council for Technical Education (AICTE), the Bar Council of India (BCI), the

Distance Education Council (DEC), the Dental Council of India (DCI),the Indian Nursing Council (INC), the Medical Council of India (MCI), the National Council for Teacher Education (NCTE), the Pharmacy Council of India (PCI),etc.

3.5 The courses of studies prescribed for a first degree and/ or the post-graduate degree / diploma programmes should have been formally approved by the respective academic bodies of the private university, such as _ Board of Studies, Academic Council and Governing/ Executive Council.

3.6. The programmes of study leading to a degree and/or a post-graduate degree/diploma offered by a private university shall conform to the relevant regulations/norms of the UGC or the concerned statutory body as amended from time to time.

3.7.A private university shall provide all the relevant information relating to the first degree and post-graduate degree/diploma programme(s) including the curriculum structure, contents, teaching and learning process, examination and evaluation system and the eligibility criteria for admission of students, to the UGC on a proforma prescribed by the UGC prior to starting of these programmes.

3.8. The UGC on detailed examination of the information made available as well as the representations and grievances received by it from the students as well as concerned public relating to the deficiencies of the proposed programme(s) not conforming to various UGC Regulations, shall inform the concerned university about any shortcomings in respect of conformity to relevant regulations, for rectification. The university shall offer the programme(s) only after necessary rectification.

3.9. The admission procedure and fixation of fees shall be in accordance with the norms/guidelines prescribed by the UGC and other concerned statutory bodies.

**4. Inspection**

The UGC may cause periodic inspection of the private university and its off-campus centre(s), study centre(s). off-shore campus(es) etc. offering its programmes.
For this purpose, the UGC may call for all relevant information from the concerned private university, as provided in the UGC (Returns of Information by Universities) Rules,. 1979 as amended from time to time.

**5. Consequences of violations**

5.1. After inspection and assessment of a private university providing first degree and / or post graduate degree/diploma courses, the UGC may indicate to the university any deficiency and non-conformity with the relevant UGC Regulations and give it reasonable opportunity to rectify the same. If the Commission is

satisfied that the private university has, even after getting an opportunity to do so, failed to comply with the provisions of any of the Regulations, the Commission may pass an order prohibiting the private university from offering any course for the award of the first degree and / or the post-graduate degree/diploma, as the case may be, till the deficiency is rectified.

5.2. The UGC may take necessary action against a private university awarding a first degree and / or a post-graduate degree/diploma, which are not specified by the UGC, and inform the public in general through a public notification. A private university continuing such programme(s) and awarding unspecified degree(s) shall be liable for penalty under Section 24 of the UGC Act.

**(Prof. Ved Prakash)**

**Secretary**

ESI 2008-03

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಪ್ರತ್ಯೇಕ ಅಧಿನಿಯಮದ ಮೂಲಕ ಖಾಸಗಿ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸುವ ಸಂಬಂಧದ ಮಾರ್ಗಸೂಚಿಗಳಿಗೆ ಅನುಮೋದನೆ ನೀಡುವ ಕುರಿತು.

ಓದಲಾಗಿದೆ:-

ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು ಇವರ ಪತ್ರ ಸಂಖ್ಯೆ: ಕರಾಉಶಿಪ/ಖಾ.ವಿ.ಕರಡು ನಿಯಮ/ಜಿ.ಎಫ್.255/2013-14/ 118, ದಿ: 4-6-2016.

---

ಪ್ರಸ್ತಾವನೆ:-

ಖಾಸಗಿ ವಿಶ್ವವಿದ್ಯಾಲಯಗಳ ಸ್ಥಾಪನೆ ಕುರಿತು ಕರಡು ನಿಯಮಗಳನ್ನು ರಚಿಸಲು ನೇಮಿಸಲಾಗಿದ್ದ ಸಮಿತಿಯು ತನ್ನ ಶಿಫಾರಸ್ಸುಗಳನ್ನು ಸಲ್ಲಿಸಿದ್ದು, ಸದರಿ ಶಿಫಾರಸ್ಸುಗಳಿಗೆ ದಿ: 5-5-2016 ರಂದು ಜರುಗಿದ ಪರಿಷತ್ತಿನ 16ನೇ ಸಾಮಾನ್ಯ ಸಭೆಯು ಅನುಮೋದನೆ ನೀಡಿರುತ್ತದೆ. ಸದರಿ ಕರಡು ನಿಯಮಗಳಿಗೆ ಮತ್ತು ಇದಕ್ಕೆ ಸಂಬಂಧಿಸಿದ ನಿಗದಿತ ನಮೂನೆಗಳಿಗೆ ಹಲವಾರು ಅಂಶಗಳನ್ನು ಮಾರ್ಪಾಡು/ಸೇರ್ಪಡೆ ಮಾಡಬೇಕಾಗುತ್ತದೆ. ಸದರಿ ಕರಡು ನಿಯಮಗಳನ್ನು/ಮಾರ್ಗಸೂಚಿಗಳನ್ನು ಅಧಿನಿಯಮಗಳಿಗೆ ಹಾಗೂ ನಿಗದಿತ ನಮೂನೆಗಳಿಗೆ ಸೇರಿಸದಿದ್ದಲ್ಲಿ ವ್ಯತಿರಿಕ್ತವಾಗುತ್ತದೆ. ಸಂಬಂಧಪಟ್ಟ ಖಾಸಗಿ ವಿಶ್ವವಿದ್ಯಾಲಯದ ಅಧಿನಿಯಮಗಳಿಗೆ ತಿದ್ದುಪಡಿ ತಂದು ಸೇರಿಸಬೇಕಾಗುತ್ತದೆ. ಆದ್ದರಿಂದ ಅಧಿನಿಯಮಗಳಲ್ಲಿ ಕೆಲವು ನ್ಯೂನತೆಗಳಿರುವುದರಿಂದ ಅವುಗಳನ್ನು ಸಹ ಗಮನಿಸಿ ಈಗಾಗಲೇ ರಚಿಸಲಾದ ಸಮಿತಿಯ ಮುಂದೆ ಮಂಡಿಸಿ ಅಧಿನಿಯಮಗಳಿಗೆ ಉದ್ದೇಶಿತ ತಿದ್ದುಪಡಿಗಳನ್ನು ಸಮಗ್ರವಾಗಿ ಸೂಚಿಸಬಹುದಾಗಿದೆ. ಖಾಸಗಿ ವಿಶ್ವವಿದ್ಯಾಲಯದ ಸ್ಥಾಪನೆಯ ಕರಡು ನಿಯಮಗಳಲ್ಲಿರುವಂತೆ ಅಧಿನಿಯಮದಲ್ಲೂ ಸಹ ತಿದ್ದುಪಡಿ ತಂದು ವ್ಯತಿರಿಕ್ತವಾಗದಂತೆ ನೋಡಿಕೊಳ್ಳಲು ಅನುಮೋದನೆ ನೀಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಲಾಯಿತು. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಇಡಿ 449 ಯುಆರ್‌ಸಿ 2016, ಬೆಂಗಳೂರು ದಿನಾಂಕ: 24-1-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಪ್ರತ್ಯೇಕ ಅಧಿನಿಯಮದ ಮೂಲಕ ಖಾಸಗಿ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸುವ ಸಂಬಂಧದ ಈ ಕೆಳಕಂಡ ಮಾರ್ಗಸೂಚಿಗಳಿಗೆ ಹಾಗೂ ನಮೂನೆಗೆ ಸರ್ಕಾರದ ಅನುಮೋದನೆ ನೀಡುತ್ತಾ, ಎಲ್ಲಾ ವಿದ್ಯಾಸಂಸ್ಥೆಗಳು ಇದರ ಲಾಭ ಮತ್ತು ಮಾರ್ಗದರ್ಶನ ಪಡೆಯುವ ಸಲುವಾಗಿ ಸದರಿ ಮಾರ್ಗಸೂಚಿಗಳಿಗೆ ವ್ಯಾಪಕ ಪ್ರಚಾರ ನೀಡುವಂತೆ ಆದೇಶಿಸಲಾಗಿದೆ.

## GUIDELINES FOR THE ESTABLISHMENT OF PRIVATE UNIVERSITIES BY SEPARATE ACT

PREAMBLE -

Ever since Indian Independence, providing education to the children has been the prime focus of the country. In order to enhance equitable access and to ensure the fulfilment of national social goals, obligations as well as purposes, the private sector has been encouraged to invest in the sphere of education, at different levels, viz., primary, secondary and higher. It is a matter of satisfaction that several private sector players have already started their educational institutions to cater to education requirements of the needy at all the three levels. The Karnataka State has been one of the early champions in engaging the private sector to complement and reinforce its efforts. To provide greater autonomy to private sector for achieving global standards of excellence in higher education, the concept of establishing State Private Universities has been introduced by Karnataka State Government. In order to establish transparent and accountable academic, organizational and financial management systems in State Private Universities, KSHEC has formulated the following guidelines:

1. Each Private University in Karnataka shall be established under a separate Act by a Sponsoring Body which may be in the form of:

   *(a) Society registered under the Societies Registration Act 1860 (or any other corresponding law in force in the State), OR*
   *(b) Public Trust registered under the Public Trust Act, 1866, OR*
   *(c) Company registered under Section 25 of the Companies Act, 1956.*

2. The Sponsoring Body can apply to Karnataka State Government through KSHEC for the establishment of a Private University, if it has
   - *25 Acres of land within the limits of Bruhat Bengaluru Mahanagara Palike (BBMP) and Bengaluru Metropolitan Regional Development Authority (BMRDA) OR 35 Acres of land within City Corporation Limits of Mysuru, Mangaluru, Hubballi, Bellari, Gulburga, and Belagavi OR 50 Acres of land at other places*
   - *adequate financial resources for creating the specified Statutory Funds and conducting the University affairs and*
   - *experience/ expertise in running higher Education Institutions,.*

3. The Sponsoring Body shall obtain the proposal format for the establishment of State Private University from KSHEC on payment of non-refundable fee of Rs. TEN THOUSAND ONLY in the form of Demand Draft drawn in favour of Executive Director, KSHEC, Bengaluru payable at Bengaluru.

4. The Sponsoring Body shall submit SEVEN HARD COPIES AND ONE SOFT COPY of the proposal along with requisite Annexures, Enclosures, Undertakings and Declarations to the Executive Director, KSHEC, Bengaluru along with a non-refundable PROCESSING FEE of Rs. TEN LAKHS ONLY in the form of Demand Draft drawn in favour of Executive Director, KSHEC, Bengaluru payable at Bengaluru with ONE HARD COPY AND ONE SOFT COPY to the Secretary/Principal Secretary/Additional Chief Secretary of Higher Education Department, Government of Karnataka.

5. The office of the Executive Director shall examine the proposal and may call for such other information from the Sponsoring Body as it may deem necessary to initiate further action.

6. The Executive Director, in consultation with the Vice Chairman and the Chairman of KSHEC, shall constitute a Screening Committee with a minimum of FIVE members consisting of Vice-Chancellors / former Vice-Chancellors / Education Experts including Executive Director of KSHEC as Member Secretary to carry out on-the-spot inspection and submit a report.

7. The Executive Director shall forward the Screening Committee Report to the Secretary/Principal Secretary/Additional Chief Secretary of Higher Education for further action.

8. The Secretary/Principal Secretary/Additional Chief Secretary shall communicate to the Sponsoring Body about the final decision of the State Government on the proposal.

---

# KARNATAKA STATE HIGHER EDUCATION COUNCIL (KSHEC), BENGALURU

## PROPOSAL FOR ESTABLISHING A PRIVATE UNIVERSITY IN KARNATAKA STATE

*(Please refer to the guidelines attached with the format before filing the proposal)*

| | | | |
|---|---|---|---|
| 1 PARTICULARS OF THE SPONSORING BODY | | | |
| a | Name of Sponsoring Body | | |
| b | Whether it is Registered Society/ Public Trust/ Company? | | |
| c | Contact Details | Postal Address | |
| | | Phone | |
| | | Fax | |
| | | Email ID | |
| | | Website | |
| e | Date of Registration of Sponsoring Body (A copy of the Registration Document to be enclosed with the Proposal as Annexure A) | | |
| f | List of Higher Educational Institutions established by Sponsoring Body, if any: (Copy of the latest Annual Report of Sponsoring Body to be enclosed with the Proposal as Annexure B) | Inside Karnataka | |
| | | Outside Karnataka, but inside India | |
| | | Outside India | |
| 2 PARTICULARS OF THE AUTHORIZED SIGNATORY OF THE SPONSORING BODY TO TAKE DECISIONS ON ITS BEHALF | | | |
| a | Name of the authorized Signatory | | |
| b | Designation | | |
| c | Contact Details | Postal Address | |
| | | Phone | |
| | | Mobile | |
| | | Fax | |
| | | Email address | |
| 3 PARTICULARS OF THE PROPOSED UNIVERSITY | | | |
| a | Name of the proposed University | | |
| | Place of Location of Main Campus with the nature of area (Indicate one) | Place of location<br>• *Within the limits of BBMP and BMRDA*<br>• *within the City Corporation Limits of Mysuru, Mangaluru, Hubballi, Bellari, Gulburga, and Belagavi*<br>• *other places* | |
| b | Full Postal Address with pin code | | |

| | | | | | | |
|---|---|---|---|---|---|---|
| c | Land area in possession of Sponsoring Body set apart and approved for the University (A copy of the Record of Rights or Khata Certificate issued by the Competent Authority to be enclosed with the proposal as Annexure C) | Area (in Acres) | Survey Nos. | Hobli | Taluk | District |
| | | | | | | |
| d | Proposed University Type (Indicate one) | New University | | Existing Campus / Institution(s) | | |

| | | | |
|---|---|---|---|
| E | If it is an existing Campus / Institution(s), indicate the present status | Name of Campus / Institution(s) | |
| | | Type of Campus / Institution(s)<br>• Affiliated<br>• Autonomous<br>• Others | |
| | | Type of Programmes<br>• General<br>• Professional<br>• Others | |
| | | List of Programmes<br>• At UG<br>• At PG<br>• Others | |
| | | Name of Affiliating University(s) | |
| | | Details of approval received from Statutory / Regulatory Body(s)? | |
| | | Accreditation Details such as list of accredited programmes, name(s) of Accrediting Body(s), Validity Date(s) | |
| | | Any other information supporting its Academic Stature | |

| | | |
|---|---|---|
| 4 DETAILS OF THE PROPOSAL (Enclosures may be attached, if space is insufficient) | | |
| a | Aims and Objectives of the Proposed University | |
| b | Justification for the establishment of the University | |
| c | List of Faculties and Departments proposed for first FIVE years | |
| d | Nature and type of Programmes proposed for first FIVE years | |
| e | Physical Infrastructure/Other On-Campus Facilities proposed at the main campus | |

| | | | |
|---|---|---|---|
| f | Annual growth of the University in first Five Years | Student strength | Staff Strength |
| | | | |
| g | Procedure for Faculty/Staff recruitment | | |
| h | Procedure for admission of students to various programmes of study at the University | | |
| i | Phased outlays of capital expenditure planned for a period of FIVE academic years immediately following the commencement date | | |
| j | Item-wise estimated recurring expenditure and estimated average expenditure per student (UG/PG separately) | | |
| k | Scheme of generation of funds through the recovery of tuition and other fees from students, revenues anticipated from consultancy and other activities relating to the objects of the University and other anticipated incomes; | | |
| l | Scheme for mobilizing resources and the manner of repayments to each source, if any | | |
| m | Types of proposed student support offered like fee-waivers, free-ship and scholarship etc | | |
| n | Experience and expertise in the concerned discipline at the command of the Sponsoring Body as well as the financial resources | | |
| o | National/international collaborations of the University proposed, if any, along with the expected time frame | | |
| p | Long-term Strategic Plan of the University along with means of financing its planned development | | |
| q | Status of fulfillment of such other conditions as may be required by the State Government before the establishment of the proposed University | | |
| 5 | ANNEXURES TO BE ENCLOSED WITH THE PROPOSAL | | |
| a | Memorandum of Association / Bye Laws of the Sponsoring Body (to be enclosed as Annexure D) | | |
| b | Audited Statements of Accounts of the Sponsoring Body for the previous three years or from the date of registration in case of newly registered Sponsoring Body, (to be enclosed as Annexure E1, E2, E3) | | |
| c | Proposal of the University, if any, to start Special Programmes/Schemes of benefit to Farmers / Women / Industrial Workers etc (to be enclosed as Annexure F) | | |
| d | Master Plan for the proposed main campus & details of other campuses, if any (to be enclosed as Annexure G) | | |
| e | Any other Document relevant to the Proposal (Please Specify and to be enclosed as Annexure H) | | |

| | | |
|---|---|---|
| **6 LIST OF UNDERTAKINGS TO BE GIVEN BY THE SPONSORING BODY** | | |
| a | Create adequate facilities at the University for teaching, research, examinations and other requirements related to Programmes proposed and in accordance with the rules of UGC and other Statutory/Regulatory Bodies concerned (details to be enclosed as Annexure I) | |
| b | Produce evidence of having sufficient funds or of its capacity to invest required funds for establishment and maintenance of the proposed University (details to be enclosed as Annexure J) | |
| c | Create Permanent Statutory Endowment Fund, University Endowment Fund and such other Statutory Funds to be managed as per the rules in this regard (details to be enclosed as Annexure K) | |
| d | Declare that all movable and immovable properties of the campus already established, if any and those established after the declaration of the University, shall remain legally vested in the name of the University (Declaration to be enclosed as Annexure L) | |
| e | Confirm that the income from the property of the University howsoever derived shall be utilized only for the promotion of the Objects of the University including its growth and development (Declaration to be enclosed as Annexure M) | |
| f | Abide by the UGC (Establishment and Maintenance of Standards in Private Universities) Regulation, 2003 and its amendments, if any, on being conferred the University status and also the Rules/ Regulations of the relevant Statutory Bodies issued from time to time (Declaration to be enclosed as Annexure N) | |
| g | Agree to provide any other undertaking required by the State Government/KSHEC relevant to the Proposal (Declaration to be enclosed as Annexure O) | |

| | | | | | |
|---|---|---|---|---|---|
| **7 DETAILS OF THE PAYMENTS** | | | | | |
| a | Proposal Application Format Fee | Amount | DD # | Bank | Issue Date |
| | | | | | |
| b | Proposal Processing Fee | Amount | DD # | Bank | Issue Date |
| | | | | | |

This is to certify that the information provided above is true and correct to the best of our knowledge and belief. We are also aware that our proposal is liable to be rejected if there

are any errors or incorrect Declarations in the above information.

Date:

Place:

Authorized Signatory of Sponsoring Body
with Seal of Sponsoring Body

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಂ.ಎ.ಅಹಮ್ಮದ್ ಜಾನ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-2)

24/01/12

ಇವರಿಗೆ:-

1. ಅಧ್ಯಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಅರಮನೆ ರಸ್ತೆ, ಬೆಂಗಳೂರು.
2. ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಅರಮನೆ ರಸ್ತೆ, ಬೆಂಗಳೂರು.
3. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಅರಮನೆ ರಸ್ತೆ, ಬೆಂಗಳೂರು.
4. ಮಾನ್ಯ ಉನ್ನತ ಶಿಕ್ಷಣ ಮಂತ್ರಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ).
6. ಸರ್ಕಾರದ ಉಪಕಾರ್ಯದರ್ಶಿಗಳ ಆಪ್ತ ಸಹಾಯಕರು, ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು).
7. ರಕ್ಷಣಾ ಕಡತ/ಹೆಚ್ಚುವರಿ ಪ್ರತಿ.

---

GOVERNMENT OF KARNATAKA

EO. No. ED 49 URC 2020

Karnataka Government Secretariat,
M.S. Building,
Bangalore, Date: 18-03-2020.

# CORRIGENDUM

In the Government Order bearing No. ED 449 URC 2016, dated: 24.01.2017, werein guidelines were issued for establishing transparent and accountable academic organizational and financial management systems in State Private Universities, in the operative portion, for the 2nd guideline, the following shall be substituted, namely : -

**"2. The Sponsoring Body shall apply to Karnataka State Government through Karnataka State Higher Education Council, Bangalore for the establishment of a Private University, if it has:**

**a)**

**I) 25 Acres of land consisting of a single block or two blocks (Two Split pieces of land) within the limits of Bruhat Bengaluru Mahanagara Palike (BBMP) and Bengaluru Metropolitan Reginal Development Authority (BMRDA)**

**OR**

**II) 35 Acres of Land within the City Corporation Limits of Mysuru, Mangaluru, Hubballi-Dharwad, Belgaum, Gulburga, Tumkur, Bellari, Shivamoga, Davanagere, and Vijayapura.**

**OR**

**III) 50 Acres of land at other places.**

**b) Adequate financial resources for creating the specified Stattory Funds and conducting the University affairs and**

**c) Experience/expertise in running Higher Education Institution."**

Yours faithfully,

Mahesh

**(MAHESH.R)**
Under Secretary to Government
Education Department(Universities-2)

18/3/2020

To,

1) Executive Director, Karnataka State Higher Education Council, Bangalore.
2) PS to Hon'ble Deputy Chief Minister for Higher Education, Vikasa Soudha, Bengaluru.
3) PS to Additional Chief Secretary to Government, Higher Education Department.
4) P.A. to Deputy Secretary to Government, Higher Education Department, (Universities).
5) SGF/Spare Copies.

* * *